ಕುಮಾರವ್ಯಾಸ ಮಹಾಕವಿಯ

ಕರ್ಣಾಟ ಭಾರತ ಕಥಾಮಂಜರಿ

ಸಂಪಾದಕರು

ಕುವೆಂಪು

ಮತ್ತು

ಮಾಸ್ತಿ ವೆಂಕಟೇಶ ಅಯ್ಯಂಗಾರ್

ಪ್ರಕಾಶನ

ಪ್ರಸಾರಾಂಗ, ಮೈಸೂರು ವಿಶ್ವವಿದ್ಯಾನಿಲಯ

1974

ಬೆಲೆ : ಏಳು ರೂಪಾಯಿಗಳು

ಕುಮಾರವ್ಯಾಸ ಮಹಾಕವಿಯ

ಕರ್ಣಾಟ ಭಾರತ ಕಥಾಮಂಜರಿ

ಸಂಪಾದಕರು

ಕುವೆಂಪು

ಮತ್ತು

ಮಾಸ್ತಿ ವೆಂಕಟೇಶ ಅಯ್ಯಂಗಾರ್

ಪ್ರಕಾಶನ

ಪ್ರಸಾರಾಂಗ, ಮೈಸೂರು ವಿಶ್ವವಿದ್ಯಾನಿಲಯ

1974

RAJARAM BOOK HOUSE,
Gandhi Bazaar,
SHIMOGA CITY.

Karnata Bharata Kathamanjari of Kumaravyasa, Second edition, published by the Director, Prasaranga, University of Mysore, Mysore-570012; Crown 1/4, xxxvi+624

ಹಕ್ಕುಗಳು ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸೇರಿವೆ

ಪ್ರಕಾಶನ: ಡೈರೆಕ್ಟರ್, ಪ್ರಸಾರಾಂಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-೫೭೦೦೧೨
ಮುದ್ರಣ: ಮೈಸೂರು ವಿಶ್ವವಿದ್ಯಾನಿಲಯದ ಮುದ್ರಣಾಲಯ, ಮೈಸೂರು-೫೭೦೦೧೨

ಗದುಗಿನ ವೀರನಾರಾಯಣದೇವರ ಗುಡಿಯಲ್ಲಿರುವ "ಕುಮಾರವ್ಯಾಸರ ಕಂಬ"

ಕುಮಾರವ್ಯಾಸ ಕವಿಯ ಜನ್ಮಸ್ಥಳವಾದ ಕೋಳಿವಾಡ ಗ್ರಾಮದಲ್ಲಿರುವ ವೀರನಾರಾಯಣದೇವರು
(ಮಾಧವ ಜನಾರ್ಧನ ಎಂಬುದಾಗಿಯೂ ಕರೆಯುತ್ತಾರೆ)

ಗದುಗಿನ ವೀರನಾರಾಯಣದೇವರು

ಕುಮಾರವ್ಯಾಸ ಭಾರತದ ಮೂಲಪ್ರತಿಯ ತಾಳೇಗರಿ ಪುಸ್ತಕಗಳು

ವಿನಂತಿ

ಕನ್ನಡ ಸಾಹಿತ್ಯದಲ್ಲಿ ರತ್ನಪ್ರಾಯವಾದುದೆಂದೆನಿಸಿರುವ ಕುಮಾರವ್ಯಾಸ ಭಾರತವು ಜನತೆಗೆ ಸುಂದರವಾದ ಮುದ್ರಣದಲ್ಲೂ ಅತಿ ಸುಲಭ ಬೆಲೆಗೂ ದೊರೆಯುವಂತಾಗಬೇಕೆಂದು ೧೯೫೪ರಲ್ಲಿ ಆಗ ಮುಖ್ಯ ಮಂತ್ರಿಗಳಾಗಿದ್ದ ಶ್ರೀ ಕೆ. ಹನುಮಂತಯ್ಯನವರು ಸೂಚಿಸಿದರು. ಮೈಸೂರು ಸರ್ಕಾರದ ಸಾಹಿತ್ಯ ಮತ್ತು ಸಂಸ್ಕೃತಿ ಅಭಿವೃದ್ಧಿ ಇಲಾಖೆಯ ಕೇಂದ್ರ ಸಲಹಾಸಮಿತಿ ಈ ಸೂಚನೆಯನ್ನು ಅಂಗೀಕರಿಸಿತು. ಅನಂತರ ಅದೇ ಇಲಾಖೆಯ ಪ್ರಕಟನಾಸಮಿತಿ ಕುಮಾರವ್ಯಾಸ ಭಾರತವನ್ನು ಸಂಪಾದಿಸಿಕೊಡುವ ಕಾರ್ಯವನ್ನು ಶ್ರೀ ಮಾಸ್ತಿ ವೆಂಕಟೇಶ ಅಯ್ಯಂಗಾರ್ಯರವರಿಗೂ, ಶ್ರೀ ಕೆ. ವಿ. ಪುಟ್ಟಪ್ಪನವರಿಗೂ ವಹಿಸಿಕೊಡಬೇಕೆಂದು ನಿರ್ಣಯಿಸಿತು. ಈ ನಿರ್ಣಯವನ್ನು ಮೈಸೂರು ಸರ್ಕಾರವು ಒಪ್ಪಿದ್ದಲ್ಲದೆ, ಈ ಪುಸ್ತಕವನ್ನು ಕೇವಲ ಎರಡು ರೂಪಾಯಿಗಳ ಬೆಲೆಗೆ ಮಾರಬೇಕೆಂದು ಆಜ್ಞೆಮಾಡಿತು.

ಈ ಗ್ರಂಥವನ್ನು ಸಂಪಾದಿಸಿಕೊಡಲು ಒಪ್ಪಿ ಆ ಕಾರ್ಯವನ್ನು ನಿರ್ವಹಿಸಿರುವ ಶ್ರೀ ಮಾಸ್ತಿ ವೆಂಕಟೇಶ ಅಯ್ಯಂಗಾರ್ಯರವರಿಗೂ, ಶ್ರೀ ಕೆ. ವಿ. ಪುಟ್ಟಪ್ಪನವರಿಗೂ ಸಾಹಿತ್ಯ ಮತ್ತು ಸಂಸ್ಕೃತಿ ಅಭಿವೃದ್ಧಿ ಇಲಾಖೆಯು ಋಣಿಯಾಗಿದೆ. ಪುಸ್ತಕವನ್ನು ಅಂದವಾಗಿ ಮುದ್ರಿಸಿಕೊಟ್ಟಿರುವ ಮೈಸೂರು ಸರ್ಕಾರಿ ಮುದ್ರಣಾಲಯದ ಮೈಸೂರು ಶಾಖೆಗೂ ಈ ಇಲಾಖೆಯ ವಂದನೆಗಳು ಸಲ್ಲುತ್ತವೆ.

ಅತಿ ಸುಲಭ ಬೆಲೆಯಲ್ಲಿ ದೊರೆಯುವ ಈ ಗ್ರಂಥವನ್ನು ಓದಿ ಕನ್ನಡಿಗರೆಲ್ಲರೂ ಆನಂದಿಸಲಿ.

ಎ. ಎನ್. ಮೂರ್ತಿರಾವ್
ಡೈರೆಕ್ಟರ್
ಮೈಸೂರು ಸರ್ಕಾರದ ಸಾಹಿತ್ಯ ಮತ್ತು
ಸಂಸ್ಕೃತಿ ಅಭಿವೃದ್ಧಿ ಇಲಾಖೆ

ಬೆಂಗಳೂರು
೨೭-೫-೧೯೫೮

ಎರಡನೆಯ ಮುದ್ರಣವನ್ನು ಕುರಿತು

೧೯೫೮ ರಲ್ಲಿ ಮೈಸೂರು ಸರ್ಕಾರದ ಸಾಹಿತ್ಯ ಮತ್ತು ಸಂಸ್ಕೃತಿ ಅಭಿವೃದ್ಧಿ ಇಲಾಖೆಯು. ಆಗ ಮುಖ್ಯಮಂತ್ರಿಗಳಾಗಿದ್ದ ಶ್ರೀ ಕೆ. ಹನುಮಂತಯ್ಯನವರ ನಿರ್ದೇಶನದಂತೆ ಹಲವಾರು ಜನಪ್ರಿಯ ಮಹಾ ಕೃತಿಗಳ ಸುಲಭ ಬೆಲೆಯ ಆವೃತ್ತಿಗಳನ್ನು ಪ್ರಕಟಿಸಿತು. ಆ ಶ್ರೇಣಿಯಲ್ಲಿ ಕುಮಾರವ್ಯಾಸ ಮಹಾಕವಿಯ 'ಕರ್ಣಾಟ ಭಾರತ ಕಥಾಮಂಜರಿ'ಯೂ ಒಂದು. ಆ ಮುದ್ರಣದ ಪ್ರತಿಗಳೆಲ್ಲವೂ ಬಹು ಬೇಗನೆ ಮುಗಿದು ಹೋಗಿದ್ದುದರಿಂದ ಈಗ ಮತ್ತೊಮ್ಮೆ ಅದನ್ನು ಪುನರ್ಮುದ್ರಿಸಲಾಗಿದೆ. ಈ ಕೆಲಸವನ್ನು ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗಕ್ಕೆ ವಹಿಸಿಕೊಟ್ಟು, ಸುಲಭ ಬೆಲೆಯಲ್ಲಿಯೇ ಅದು ಜನತೆಗೆ ದೊರೆಯುವಂತಾಗಬೇಕೆಂಬ ಘನ ಉದ್ದೇಶದಿಂದ ಧನ ಸಹಾಯ ನೀಡಿ ಸರಕಾರವು ಉಪಕಾರ ಮಾಡಿದೆ. ಇದಕ್ಕಾಗಿ ಕರ್ನಾಟಕ ಸರಕಾರಕ್ಕೆ ಹೃತ್ಪೂರ್ವಕ ಕೃತಜ್ಞತೆಗಳನ್ನರ್ಪಿಸಲು ತುಂಬಾ ಸಂತೋಷವಾಗುತ್ತದೆ.

ಇದು ಮೊದಲು ಸರ್ಕಾರದ ವತಿಯಿಂದ ಪ್ರಕಟವಾಗಿದ್ದ ಆವೃತ್ತಿಯ ಪುನರ್ಮುದ್ರಣ ಮಾತ್ರ. ಮುದ್ರಣ ಸ್ಖಾಲಿತ್ಯಗಳ ಕಡೆಗೆ ಗಮನ ಕೊಟ್ಟಿರುವುದರ ಹೊರತು ಬೇರೆ ಯಾವುದೇ ಬದಲಾವಣೆಯನ್ನು ಮಾಡಿಲ್ಲ. ಕೆಲವು ಸಂಧಿಗಳಲ್ಲಿ ಪದ್ಯಸಂಖ್ಯೆಗಳನ್ನು ಹಾಕುವಾಗ ಆಗಿದ್ದ ವ್ಯತ್ಯಾಸವನ್ನು ವಾಚಕರ ಸೌಲಭ್ಯಕ್ಕಾಗಿ ಸರಿಪಡಿಸಿದೆ. ಗ್ರಂಥ ಸಂಪಾದನ ಕ್ಷೇತ್ರಕ್ಕೆ ಕೈಹಾಕಿದ್ದರೆ ಅದು ಸುಲಭದಲ್ಲಿ ಮುಗಿಯುವ ಮತ್ತು ಇಷ್ಟು ಬೇಗ ಅಣಿಯಾಗುವ ಸಾಧ್ಯತೆ ಇರಲಿಲ್ಲ. ಆದ್ದರಿಂದ ಮೇಲಿನ ಜನಪ್ರಿಯ ಆವೃತ್ತಿಯ ಮರು ಮುದ್ರಣದಿಂದ ಮಾತ್ರವೇ ತೃಪ್ತಿಪಟ್ಟುಕೊಳ್ಳಬೇಕಾಗಿ ಬಂದಿದೆ.

ಈ ಆವೃತ್ತಿಯಲ್ಲಿ ಹೊಸದಾಗಿ ನಾಲ್ಕು ಛಾಯಾಚಿತ್ರಗಳನ್ನು ಸೇರಿಸಿದೆ. ಇವುಗಳನ್ನು ಒದಗಿಸಿದವರು ಗದಗಿನ ಶ್ರೀ ಎನ್. ಪಿ. ಕುಲಕರ್ಣಿ ಅವರು. ಗ್ರಂಥದ ಸೌಂದರ್ಯವು ಆಕರ್ಷಕವಾಗುವಂತೆ ರಕ್ಷಾಕವಚ ವಿನ್ಯಾಸ ತಯಾರಿಸಿಕೊಟ್ಟಿರುವವರು ತರುಣ ಕಲಾವಿದ ಶ್ರೀ ಕೆ. ಎಲ್. ವೆಂಕಟೇಶ್. ಇವರಿಬ್ಬರಿಗೂ ಆಭಾರಿಗಳಾಗಿದ್ದೇವೆ. ಮೈಸೂರು ವಿಶ್ವವಿದ್ಯಾನಿಲಯ ಮುದ್ರಣಾಲಯದ ಸಿಬ್ಬಂದಿವರ್ಗದವರು ಬಹಳ ಕಷ್ಟಪಟ್ಟು ದುಡಿದು ಇಷ್ಟು ಸುಂದರವಾಗಿ ಪುಸ್ತಕವನ್ನು ಅಚ್ಚು ಮಾಡಿದ್ದಾರೆ. ನಿರ್ದೇಶಕರಾದ ಶ್ರೀ ಎಚ್. ನರಸಣ್ಣನವರಿಗೂ, ಮುದ್ರಣಾಲಯದ ಸಿಬ್ಬಂದಿವರ್ಗದ ಮಿತ್ರರಿಗೂ ಹೃತ್ಪೂರ್ವಕ ಕೃತಜ್ಞತೆಗಳು.

ಮೈಸೂರು
೧೫–೮–೧೯೭೪

ಪ್ರಭುಶಂಕರ
ನಿರ್ದೇಶಕ

||ಶ್ರೀ||

ತೋರಣ ನಾಂದಿ

"ನಮಿಸಿ ನಾರಾಯಣನ ನರನ ಪುರುಷೋತ್ತಮನ
ವ್ಯಾಸ ವಾಗ್ದೇವಿಯರ ಬಳಿಕ ವೇಳ್ವುದು ಜಯವ"

"ಕನ್ನಡ ಸಾಹಿತ್ಯ ಒಂದು ಸಾವಿರ ವರ್ಷಗಳಿಂದ ಬೆಳೆದು ಬಂದಿದೆ. ಅನೇಕ ಕವಿಕೃತಿಗಳಿಂದ ವೈವಿಧ್ಯ ರಮಣೀಯವಾಗಿದೆ. ಆ ಸಾಹಿತ್ಯ ಕ್ಷೇತ್ರದಲ್ಲಿ ಮೂರು ಪ್ರಬಲವಾದ ಪರಿವರ್ತನೆಯ ಘಟ್ಟಗಳನ್ನು ಗುರುತಿಸ ಬಹುದು. ಅಥವಾ ಆಧುನಿಕ ಕಾಲವನ್ನೂ ಗಮನಿಸಿ ಹೇಳುವುದಾದರೆ ನಾಲ್ಕು ಘಟ್ಟಗಳನ್ನು ಗುರುತಿಸಬಹುದು.

ಒಂದನೆಯದು ಹತ್ತನೆಯ ಶತಮಾನದಲ್ಲಿ; ಎರಡನೆಯದು ಹನ್ನೆರಡನೆಯ ಶತಮಾನದಲ್ಲಿ; ಮೂರನೆ ಯದು ಹದಿನಾಲ್ಕುಹದಿನೈದನೆಯ ಶತಮಾನಾವಧಿಯಲ್ಲಿ; ನಾಲ್ಕನೆಯದು ಹತ್ತೊಂಬತ್ತು ಇಪ್ಪತ್ತನೆಯ ಶತಮಾನಾವಧಿಯಲ್ಲಿ.

ಪ್ರಥಮ ನವೋದಯದಲ್ಲಿ ಜೈನಧರ್ಮರೂಪದಿಂದ ಆವಿರ್ಭೂತವಾದ ಆ ಚೇತನಶಕ್ತಿ ಕನ್ನಡಕ್ಕೆ ಆದಿಕವಿಯಾದ ಪಂಪನ ಕೃತಿಗಳಲ್ಲಿ ತನ್ನ ಭವ್ಯ ಸ್ಮಾರಕ ಸ್ತೂಪವನ್ನು ನಿರ್ಮಿಸಿಕೊಂಡಿದೆ.

ದ್ವಿತೀಯ ನವೋದಯದಲ್ಲಿ ವೀರಶೈವಧರ್ಮರೂಪದಲ್ಲಿ ಮೈದೋರಿದ ಆ ಶಕ್ತಿ ಹರಿಹರ ರಾಘವಾಂಕರ ಕೃತಿಸಮಷ್ಟಿಯಲ್ಲಿ ತನ್ನ ಚಿರಸ್ಮೃತಿಮಂದಿರವನ್ನು ಸ್ಥಾಪಿಸಿಕೊಂಡಿದೆ.

ತೃತೀಯ ನವೋದಯದಲ್ಲಿ ವೈಷ್ಣವಭಕ್ತಿರೂಪದಲ್ಲಿ ಪುನರುತ್ಥಾನವಾದ ಆ ರಸಸ್ಫೂರ್ತಿ ಕುಮಾರ ವ್ಯಾಸ ಬಿರುದಿನ ನಾರಣಪ್ಪನ ಮಹಾಕೃತಿಯಲ್ಲಿ ತನ್ನ ವಿಯಚ್ಚುಂಬಿಯಾದ ಬೃಹದ್‌ಗೋಪುರವನ್ನು ಕಂಡರಿಸಿ ಕೊಂಡಿದೆ".

"ಈ ನಾರಣಪ್ಪನೆ ನಮ್ಮ ಸದ್ಯದ ಅವಗಾಹನೆಗೆ ಬೇಕಾದವನು. "ಕನ್ನಡ ಕಾವ್ಯವೃಷ್ಟಿಯ ಕಾಮನ ಬಿಲ್ಲಿನಲ್ಲಿ ಈತನ ನೆಲೆ ನಟ್ಟನಡು, ನೆತ್ತಿಯಮುಂಡಿ. ಹಳೆಯ, ಹೊಸಕನ್ನಡದ ತಲೆಯ ಕಿರೀಟ. ಹಳ್ಳಿ ಹಳ್ಳಿಯಲ್ಲಿ ಅಂದೂ ಇಂದೂ ಗಮಕ ಶಿರೋಮಣಿಗಳಿಂದ ನಾಡು ನಾಡೇ ಮೊಳಗಿ ರೋಮಾಂಚನಗೊಳ್ಳುವಂತೆ ರಸವನ್ನ, ಇಂಪನ್ನ, ಲಯವನ್ನ, ತಾನವನ್ನ, ಮಾತಿನ ಹರಹನ್ನ, ಛಂದಸ್ಸಿನ ಕುಣಿತವನ್ನ, ಲೀಲಾಜಾಲವಾಗಿ ಹೊಮ್ಮಿಸಿ ಹರಿಯಿಸಿದ ಮಾಟಗಾರ. ಕನ್ನಡದ ಹೊಸಹುಟ್ಟಿನಲ್ಲಿ ಹೊಸಮಾರ್ಗಕ್ಕೆ ಹೊಸಶಕ್ತಿಗೆ ದಿಕ್ಸೂಚಿ, ಧ್ರುವತಾರೆ. ವೇದವ್ಯಾಸರ ಪ್ರೇಮಕುಮಾರ, ಕುಮಾರವ್ಯಾಸನೆಂದರೂ ಸರಿ—ವೀರನಾರಾಯಣನ ಪ್ರೇಮಕಿಂಕರ, ನಮ್ಮ ನಚ್ಚಿನ ನಾರಣಪ್ಪನೆಂದರೂ ಸರಿ".

"ಮಹತ್ತಿನೊಡನೆ ಜನಪ್ರಿಯತೆಯನ್ನೂ ಪಡೆದಿರುವ ವಿರಲ ಸುಯೋಗವುಳ್ಳ ಕವಿಗಳಲ್ಲಿ ಈತ ಗಣ್ಯನು". "ಕಲಿಯುದವರಿಗೂ ಕಾಮಧೇನುವಾಗಿ ಕನ್ನಡ ನಾಡಿನ ಜನಜೀವನದ ಹೃದಯವೇದಿಕೆಯಲ್ಲಿ ಅಗ್ರಸ್ಥಾನಸ್ಥ ಮಹಾಧ್ಯಕ್ಷನಾಗಿದ್ದಾನೆ". "ಒದ್ದೆ ಬಟ್ಟೆಯುಟ್ಟು ವೀರನಾರಾಯಣನ ಮುಂದೆ ಕುಳಿತು ಭಕ್ತಿ

ರಸಾವೇಶದಿಂದ ಆಡುತ್ತಾ ಹಾಡುತ್ತಿದ್ದ ಆ ಭಕ್ತಕವಿಯನ್ನು ನೋಡಿರಲ್ಲಿ! ಮೈಮರೆತು ಹಾಡುತ್ತಿದ್ದಾನೆ. ಜನ ಮೈಮರೆತು ಕೇಳುತ್ತಿದ್ದಾರೆ. ಅವನು ಉಟ್ಟ ಬಟ್ಟೆಯ ತೇವ ಆರಿದಂತೆಲ್ಲಾ ಅವನ ಆವೇಶವೂ ಬತ್ತುತ್ತಾ ಹೋಗುತ್ತಿದೆ. ಆದರೂ ಜನ ನಿಷ್ಪಂದರಾಗಿ ಕೇಳುತ್ತಲೇ ಇದ್ದಾರೆ......

"ದಂತಕಥೆಯಾದರೂ ಇದು ಭಾವಪೂರ್ಣವಾಗಿದೆ. ಕುಮಾರವ್ಯಾಸನ ಕಾವ್ಯಸಹ್ಯಾದ್ರಿಯ ಏರಿಳಿತಗಳಲ್ಲಿ ತಲ್ಲೀನತೆಯಿಂದ ರಸಯಾತ್ರೆಯನ್ನು ಕೈಗೊಂಡ ಸಹೃದಯ ಚೇತನಕ್ಕೆ ಆ ದಂತಕಥೆಯು ಧ್ವನಿಪೂರ್ಣವಾಗಿ ತೋರುತ್ತದೆ. ದರ್ಶನ ಪ್ರತಿಭಾವಶಿಯಾಗಿ ಭಗವಾನ್ ವೀರನಾರಾಯಣ ಕೃಪಾಸೂತ್ರ ಚಾಲಿತನಾಗಿ ಹಾಡಿದ ಆ ಭಕ್ತಕವೀಶ್ವರನಿಗೆ ಈ ಮಾತು ಒಪ್ಪುವಂತೆ ಬೇರೆ ಎಲ್ಲರಿಗೂ ಒಪ್ಪದು".

"ನಾಡಿನ ಜನ ಶತಮಾನಗಳಿಂದ ಹಾಡಿ, ಹಾಡಿಸಿ ಕೇಳುತ್ತಲೇ ಇರುವ ಈ ಕವಿ ನಿಶ್ಚಿತವಾಗಿ ಯಾವ ಶತಮಾನದಲ್ಲಿದ್ದ ಎಂಬುದೇ ಸ್ಪಷ್ಟವಾಗಿ ತಿಳಿಯದಾಗಿದೆ. ಹದಿಮೂರನೆಯ ಶತಮಾನದಿಂದ ಹದಿನೈದನೆಯ ಶತಮಾನದ ತನಕ ಅವನ ಕಾಲ ತೇಂಕಾಡುತ್ತಿದೆ. ಮಹಿಮಾವಂತನಾದುದರಿಂದಲೊ ಏನೊ, ಆ ಎಲ್ಲ ಶತಮಾನಗಳಲ್ಲೂ ಅವನಿದ್ದನೆಂಬ ದಂತಕಥೆಗಳು ಬೆಳೆದುಕೊಂಡಿವೆ. ಶ್ರೀಮಾನ್ ಮಂಜೇಶ್ವರ ಗೋವಿಂದ ಪೈಗಳವರು ಆತ ಸುಮಾರು ೧೨೩೦–೩೮ರೊಳಗೆ ಇದ್ದಿರಬೇಕೆಂದು ಸಾಧಿಸಿದ್ದಾರೆ. ಕವಿಚರಿತಕಾರರು ಸುಮಾರು ೧೪೩೦ ಎಂದು ನಿರ್ಧರಿಸಿದ್ದಾರೆ. ವಿಜಯನಗರದ ಕೃಷ್ಣದೇವರಾಯನ ಕಾಲದಲ್ಲಿ, ಎಂದರೆ ೧೫೩೦ರಲ್ಲಿದ್ದಿರಬೇಕೆಂದು ಕೆಲವರು ವಾದಿಸಿದ್ದಾರೆ. ಒಟ್ಟಿನಲ್ಲಿ ಏಕಾಭಿಪ್ರಾಯವಿಲ್ಲ. ಈಗ ಸದ್ಯಕ್ಕೆ ನಮಗೆ ತಿಳಿದಿರುವಂತೆ ಕುಮಾರವ್ಯಾಸನನ್ನು ಭಾಸ್ಕರಕವಿ ಬಹಳವಾಗಿ ಅನುಕರಣೆ ಮಾಡಿರುವುದರಿಂದ (ಈ ವಿಚಾರದಲ್ಲಿ ಸಂಶಯವೇ ಇಲ್ಲ,) ೧೪೨೩ಕ್ಕಿಂತ ಮುಂಚೆಯೇ ನಾರಣಪ್ಪನು ಪ್ರಸಿದ್ಧನಾಗಿದ್ದಿರಬೇಕು ಎಂಬುದರಲ್ಲಿ ಸಂದೇಹ ಬಾರದು".

"ತನ್ನ ಕಾಲವನ್ನು ಕುಲಗೋತ್ರವನ್ನು ಬಿರುದಾಂಕಿತಗಳನ್ನು ಕುಮಾರವ್ಯಾಸನೇ ಹೇಳಿಕೊಳ್ಳಲಿಲ್ಲ. ತಮತಮಗೆ ತೋರಿದಂತೆ, ತಮ್ಮತಮ್ಮ ಆಸೆಗೆ ತಕ್ಕಂತೆ ಕೆಲವರು ಅವನಿಗೆ ಲಾಂಛನವಿತ್ತು ಆ ಕಾರಣಕ್ಕಾಗಿಯೇ ಅವನಿಗೆ ತಮಗೆ ಬೇಕಾದುದೊಂದು ಕಾಲವನ್ನಿತ್ತರು. ಕಾಲವನ್ನೇನೋ ನಿರ್ಧರಿಸಲೇಬೇಕು. ಆದರೆ ಇಂತಹ ಮಹಾಕವಿ ಯಾವ ಕುಲಕ್ಕೆ ಸೇರಿದವನೆಂದು ಬೇರು ಅಗೆಯುವುದಾದರೂ ಏಕೆ?" "ಆತ ದೊಡ್ಡ ಕವಿ. ಮತತ್ವದಿಂದಲ್ಲ, ಕವಿತ್ವದಿಂದ!" "ಆತನ ಹಣೆಯಮೇಲೆ ಯಾವ ಲಾಂಛನವಿದ್ದರೇನು: ನಮಗೆ ನಮ್ಮ ಈ ದಿವ್ಯಕವಿ ನಮ್ಮವನು; ಕನ್ನಡಿಗನು; ಕನ್ನಡಿಗರ ಕುಲವನ್ನು ಒಂದಾಗಿ ಬೆಸೆಯುವವನು: ಕನ್ನಡಿಗರ ದೊಡ್ಡ ಹೆಮ್ಮೆ; ದೊಡ್ಡ ಕಣ್ಣು; ಮಹಾತ್ಮ".

ಕವಿಯ ಕಾವ್ಯ : "ಕುಮಾರವ್ಯಾಸ ಭಾರತವು ಕಲಿಯದವರಿಗೂ ಕಾಮಧೇನು ಎಂದು ಹಿಂದೆಯೆ ಹೇಳಿದೆವು. ಇನ್ನು ಕಲಿತವರಿಗೆ ಕೇಳಬೇಕೆ? 'ಕಾವ್ಯಕ್ಕೆ ಗುರು'. ಆ ಗುರು ಕಾವ್ಯವನ್ನು ಓದಿ ಹುಚ್ಚಾಗದ ಸಹೃದಯರಿಲ್ಲ.

'ಕುಮಾರ ವ್ಯಾಸನು ಹಾಡಿದನೆಂದರೆ
ಕಲಿಯುಗ ದ್ವಾಪರವಾಗುವುದು
ಭಾರತ ಕಣ್ಣಲ್ಲಿ ಕುಣಿವುದು! ಮೈಯಲಿ
ಮಿಂಚಿನ ಹೊಳೆ ತುಳುಕಾಡುವುದು!'

ಕವಿಯ ಕಾವ್ಯವನ್ನು ಓದುವ ಮೊದಲು ಈ ಮಾತುಗಳನ್ನು ಕೇಳಿದರೆ ಕಾವ್ಯಸೌಂದರ್ಯಕ್ಕಾಗಿ ಅವನ್ನು ಮೆಚ್ಚಿಕೊಳ್ಳುತ್ತೇವೆ. ಆದರೆ ಕುಮಾರವ್ಯಾಸನ ಕಾವ್ಯ ಕುರುಕ್ಷೇತ್ರದಲ್ಲಿ ನಡೆಯುವ ಆ ವಿದ್ಯುದ್‌ಘರ್ಷಣ ವನ್ನು ಕಂಡಾಗ, ಕಂಡು ಉಂಡಾಗ, ಅವನ ಪ್ರತಿಭಾ ವಿದ್ಯುತ್ಪ್ರವಾಹದಲ್ಲಿ ಮುಳುಗಿ ಮೇಲೆದ್ದು ಈಜಿ ಬಂದಾಗ ಮೇಲಿನಮಾತು ಸುಂದರಸತ್ಯವಾಗುತ್ತದೆ".

"ಇಂತಹ ಈ ಕಾವ್ಯವನ್ನು ಬರೆದ ಕವಿ ತನ್ನನ್ನು ಬರಿಯ 'ಲಿಪಿಕಾರ' ನೆಂದುಕೊಳ್ಳುತ್ತಾನೆ. ದರ್ಶನ ಪ್ರತಿಭೆಗೆ ತನ್ನನ್ನು ತಾನು ಲಿಪಿಕಾರನನ್ನಾಗಿ ಮಾಡಿಕೊಂಡರೆ ಮಾತ್ರ ಮಹಾಕಾವ್ಯ ಮೂಡಿಬರುತ್ತದೆ ಎಂಬುದಕ್ಕೆ ಕುಮಾರವ್ಯಾಸನೆ ಸಾಕ್ಷಿ. ಹಾಗಾಗಿ ಭಗವದಭಿವ್ಯಕ್ತಿಗೆ ಪಾತ್ರಮಾತ್ರನಾಗುತ್ತಾನೆ. ಅಂತಹವನಿಗೆ ಕಾವ್ಯ 'ರಮಣೀಯಾರ್ಥ ಪ್ರತಿಪಾದಕಃ ಶಬ್ದಃ' ಮಾತ್ರವಲ್ಲ. ಕುಮಾರವ್ಯಾಸನೆ ಹೇಳಿದ್ದಾನೆ: 'ಚಾರುಕವಿತೆಯ ಬಳಕೆಯಲ್ಲ, ವಿಚಾರಿಸುವೊಡಳವಲ್ಲ' ಎಂದು. ಕಲೆಗಾಗಿ ಕಲೆ ಎಂಬುದು ಅವನಿಗೆ ಒಲ್ಲದ ಮಾತು. ವ್ಯಾಸ ಭಾರತವನ್ನು ಕುರಿತು 'ದುರಿತವ್ಯಾಳವಿಷಜಾಂಗುಳಿಕ' 'ದುರಿತದುರ್ಗ ವಿಭೇದಕರ' 'ಕಾಯಕಲ್ಮಷ ಹರವಖಿಳ ನಿಶ್ರೇಯಸದ ಸದ್ರೂಪುವಿನ ಸಂದಾಯಕ' 'ಪುಣ್ಯಸ್ತೋಮಂತರುಗಳಿಗೆ ಈ ಮಹಾಭಾರತ ಕಥಾಮೃತ ರಾಮಣೀಯಕ ಫಲವಲಾ' ಎಂದೆಲ್ಲ ಹಾಡಿದ ಕವಿಗೆ ತನ್ನ ಭಾರತವಾದರೂ ಏನಾಗಬೇಕೆಂಬುದು ಕಾಣದಿರಲಿಲ್ಲ.

"ಆದರೆ ಈ ಭಾರತ ಆ ಭಾರತದ ಪ್ರತಿಕೃತಿಯಲ್ಲ. ಇದು ಪಂಪನ ಪ್ರತಿಚ್ಛಾಯೆಯೂ ಅಲ್ಲ. ಮಹರ್ಷಿ ವ್ಯಾಸರ ಕಾವ್ಯವನ್ನು ಕನ್ನಡದಲ್ಲಿ ಪಂಪನಂತಹ ಮಹಾಕವಿ ರಚಿಸಿದ ಮೇಲೆ ಮತ್ತೊಬ್ಬ ಕವಿ ಆ ಕಾವ್ಯವನ್ನು ಹೆಚ್ಚು ಸಮರ್ಪಕವಾಗಿ, ನವೋನವ್ಯವಾಗಿ ಮಾಡುತ್ತೇನೆಂದು ಹೊರಡುವುದು ಸಾಹಸದ ಮಾತೇ ಸರಿ. ಕುಮಾರವ್ಯಾಸ ಆ ಮಹಾ ಸಾಹಸವನ್ನು, ಸಾಹಸವೆಂದೇ ಭಾವಿಸದೆ, ಕೈಗೊಂಡಿದ್ದಾನೆ. ಪಂಪನನ್ನು ಓದಿಯೇ ಇಲ್ಲವೇನೋ ಎನ್ನುವಷ್ಟುಮಟ್ಟಿಗೆ ಹೊಸಕಾವ್ಯವನ್ನು ಸೃಷ್ಟಿಸಿದ್ದಾನೆ, ಎಂದರೆ ಯಾರೂ ಆಶ್ಚರ್ಯಗೊಳ್ಳ ಬೇಕಾಗಿಲ್ಲ. ಪಂಪ ಶ್ರೇಷ್ಠತಮವಾಗಿ ಸೃಷ್ಟಿಸಿರುವ ಭಾಗಗಳನ್ನೂ ಇವನು ಅದಕ್ಕೆ ಸರಿಮಿಗಿಲಾಗುವಂತೆ, ತಾನು ಅವನನ್ನು ಓದಿಲ್ಲದೆ ಬರೆಯುತ್ತಿರುವಂತೆ ಸೃಷ್ಟಿಸಿರುವುದನ್ನು ನೋಡಬಹುದು. ಕೃಷ್ಣ ಕರ್ಣರ ಸಂವಾದ ಪ್ರಸಂಗವೆ ಇದಕ್ಕೆ ಉದಾಹರಣೆಯಾಗಬಲ್ಲದು. ಪಂಪನ ಪ್ರತಿಭಾಶ್ವೇತಚ್ಛತ್ರದಲ್ಲಿ ತನ್ನ ಕಾವ್ಯ ಸೀಮೆಯನ್ನು ವಿಸ್ತರಿಸಿಕೊಂಡ 'ಸಾಮಂತ ಚೂಡಾಮಣಿ' ಕವಿ ರನ್ನನನ್ನೂ ಸರ್ವಸ್ವತಂತ್ರವಾದ ಅವಧೂತ ರಾಜ್ಯವನ್ನು ನಿರ್ಮಾಣಮಾಡಿಕೊಂಡ ಕವಿ ಕುಮಾರವ್ಯಾಸನನ್ನೂ ಹೋಲಿಸಿ ನೋಡಿದಾಗ ಗೊತ್ತಾಗುತ್ತದೆ– ಈ ನಾರಣಪ್ಪನ ಮಹಾಪ್ರತಿಭೆಯ ಶಕ್ತಿ".

"ಕುಮಾರವ್ಯಾಸ ವಿಶಿಷ್ಟ ಶಕ್ತಿಯ ಸ್ವತಂತ್ರ ಕವಿ. ಅವನ ಕಾವ್ಯ ಹಾಗೆಯೆ ವಿಶಿಷ್ಟ ಸ್ವತಂತ್ರ . ಪ್ರಾರಂಭದ ಪರ್ವಗಳಲ್ಲಿ ಹೆಚ್ಚು ಕಡಿಮೆ ವ್ಯಾಸರನ್ನೆ ಹಿಂಬಾಲಿಸಿಕೊಂಡು ಹೊರಟ ಈತ ಯುದ್ಧಪರ್ವಗಳು ಬಂದಾಗ ತನ್ನ ದಾರಿಯನ್ನು ತಾನು ಹಿಡಿದುಕೊಂಡು ಹೋಗುತ್ತಾನೆ. ಒಟ್ಟಿನಲ್ಲಿ ಕಥೆಗಾಗಿ ಇವನು ವ್ಯಾಸರನ್ನು ಆಶ್ರಯಿಸಿ ದ್ದಾನೆಯೇ ಹೊರತು ಪಂಪನನ್ನಲ್ಲ. ರೀತಿಯ ದೃಷ್ಟಿಯಲ್ಲಂತೂ ತನ್ನನ್ನೇ ಅಭಿವ್ಯಕ್ತಗೊಳಿಸಿಕೊಂಡಿದ್ದಾನೆ. ಕಥೆಯ ದೃಷ್ಟಿಯಲ್ಲಿ ಪಂಪನಿಗೂ ಇವನಿಗೂ ಬಹಳ ಅಂತರವಿದ್ದುದರಿಂದಲೂ ಈ 'ರೀತಿ'ಯ ಅನನ್ಯತೆ ಯಿಂದಲೂ ಕುಮಾರವ್ಯಾಸ ಭಾರತ ಕನ್ನಡದಲ್ಲಿ ವಿಶಿಷ್ಟಸ್ವತಂತ್ರ ಕೃತಿಯಾಗಿದೆ".

"ಪಂಪನಿಗೆ ಭಾರತ ಲೌಕಿಕ ಕಾವ್ಯವಾಯಿತು. ಕುಮಾರವ್ಯಾಸನಿಗೆ ಭಗವದ್ವಿಲಾಸ ಭೂಮಿಕೆಯಾಯಿತು. ಪಂಪನಿಗೆ ಅದು ತನ್ನ ಕಾವ್ಯ ಪ್ರತಿಭೆಯ ಪ್ರಕಾಶನದ ಒಂದು ಪ್ರಕಾರವಾಯಿತು. ಕುಮಾರವ್ಯಾಸನಿಗೆ ಆತ್ಮ ಪ್ರಕಾಶನದ ಏಕೈಕಪ್ರಕಾರವಾಯಿತು. ಹೀಗಾಗಿ ಪಂಪನ ಪ್ರತಿಭೆ ಇಕ್ಕಡಿಯಾಗಿ ಅವನ ಎರಡು ಕಾವ್ಯಗಳಲ್ಲಿ

ವ್ಯಕ್ತವಾದರೆ, ಇವನ ಪ್ರತಿಭೆ ಒಂದೇ ಕೃತಿಯಲ್ಲಿ ಏಕೀಭವಿಸಿ ಜಾಜ್ವಲ್ಯಮಾನವಾಯಿತು. ಪಂಪ ತನ್ನ ಪ್ರಜ್ಞೆಯನ್ನು ಲೌಕಿಕ ಕಾವ್ಯಪ್ರಜ್ಞೆಯನ್ನಾಗಿ ಒಂದೆಡೆಯೂ, ಧರ್ಮಕಾವ್ಯಪ್ರಜ್ಞೆಯನ್ನಾಗಿ ಮತ್ತೊಂದೆಡೆಯೂ ಮಾಡಿಕೊಂಡದ್ದರಿಂದ ಅವನ ವ್ಯಕ್ತಿತೆಯಲ್ಲಿ ಇಮ್ಮೊಗವನ್ನು ಕಾಣುತ್ತೇವೆ. ಕುಮಾರವ್ಯಾಸ ತನ್ನ ಕಾವ್ಯಯೋಗವನ್ನು ಆತ್ಮಯೋಗದಿಂದ ಬೇರೆಂದು ಎಂದೂ ಭಾವಿಸದೆ ಇದ್ದುದರಿಂದ ತನ್ನ ಸಮಗ್ರ ವ್ಯಕ್ತಿತೆಯ ಅಖಂಡ ಸ್ವರೂಪವನ್ನು ಅವನು ಪ್ರತಿಮಿಸುವುದು ಸಾಧ್ಯವಾಯಿತು. ಈ ದೃಷ್ಟಿಯಿಂದ ಕುಮಾರವ್ಯಾಸ ಅದ್ವಿತೀಯ".

"ಕುಮಾರವ್ಯಾಸನ ಕಾವ್ಯರೀತಿಯ ವಿಚಾರವಾಗಿ ಒಂದೆರಡು ಮಾತನ್ನು ಹೇಳದಿದ್ದರೆ ತಪ್ಪಾಗುತ್ತದೆ. ಸಾಮಾನ್ಯವಾಗಿ ಕುಮಾರವ್ಯಾಸನನ್ನು ಭಾಮಿನೀಷಟ್ಪದಿಕಾರ ಎಂದು ಹೇಳುವುದರಿಂದ ಗುರುತಿಸುವುದೂ ಉಂಟು. ಆದರೆ ಇದೇ ಅವನ ರೀತಿಯಲ್ಲ. ಆ 'ರೀತಿಯ' ಕೊನೆಯ 'ಅವಸ್ಥಾ' ಮಾತ್ರ ಅದು. ಅವನ ರೀತಿ ಮಹಾಕವಿಯ ರೀತಿ, ಮಹಾಪ್ರಾಜ್ಞನ ರೀತಿ, ಅದೇ ರೂಪಕ ರೀತಿ. "Wisdom speaks first in images"—W. B. Yeats. ಎನ್ನುವ ಮಾತುಗಳನ್ನು ಇಲ್ಲಿ ನೆನೆದುಕೊಳ್ಳಬಹುದು. ಕುಮಾರವ್ಯಾಸ ಕಾಣುವುದು ರೂಪಕಗಳನ್ನು, ಮಾತನಾಡುವುದು ರೂಪಕಗಳನ್ನು, ಅಷ್ಟೇ ಏಕೆ, ಅವನ ಸಾಧಾರಣತಮ ಭಾಷೆಯೂ ರೂಪಕದಿಂದ ದೀಪ್ತಗೊಂಡಿರುತ್ತದೆ. ಈ ಭೂಮಿಕೆಯಲ್ಲಿ ಇವನನ್ನು ಸರಿಗಟ್ಟುವ ಕವಿ ಕನ್ನಡದಲ್ಲಿಲ್ಲವೇ ಇಲ್ಲ. ಅವನನ್ನು 'ರೂಪಕಸಾಮ್ರಾಜ್ಯ ಚಕ್ರವರ್ತಿ' ಎಂದು ಕರೆದ ಮಾತು ಗಾದೆಯಾಗಿದೆ. ಉದಾಹರಣೆಗಾಗಿ, ಒಂದೆರಡು ರೂಪಕಗಳನ್ನು ನೋಡಬಹುದು: 'ಶಿವನ ಕಾರುಣ್ಯಾಯುಧವೆ ಮಸೆದುದು ಸುರೇಂದ್ರ ಸ್ನೇಹ ಸಾಣೆಯಲಿ', 'ಮುನಿಯ ಮಾತಿನ ಬಲೆಗೆ ಸಿಲುಕಿತು ಜನಪತಿಯ ಚೈತನ್ಯಮೃಗ', 'ನಮ್ಮ ಭಾಗ್ಯದ ಬಾಣಸಿಗ ವಿಧಿ ವಿಷವ ಬೆರಸುವೊಡಾರು ಕಾವರು', 'ಬಂಧುಗಳ ದರುಶನ ಫಲವಲಾ ಸಂಸಾರ ತರುವಿಂಗೆ', 'ಅಪಕೀರ್ತಿ ನಾರಿಯ ಸೆರಗ ಹಿಡಿದರು', ಹೀಗೆ ಅವನು ನುಡಿಯುವ ಭಾಷೆಯೇ ಭಾವವಾಗುತ್ತದೆ; ಭಾಷೆಯೇ ರೂಪಕವಾಗುತ್ತದೆ. ರೂಪಕವನ್ನು ಆ ನುಡಿಯಿಂದ ಬಿಡಿಸಿ ತೆಗೆಯುವುದಕ್ಕೆ ಸಾಧ್ಯವಾಗುವುದಿಲ್ಲ. ಯಾರನ್ನಾದರೂ ಅನುವಾದ ಮಾಡಬಹುದು. ಕುಮಾರವ್ಯಾಸನನ್ನು ಅನುವಾದ ಮಾಡುವುದು ಎಂದೆಂದಿಗೂ ದುಸ್ಸಾಧ್ಯ. ಕಾರಣ ಅವನ ಪ್ರತಿಭೆ ಭಾಷೆಯಲ್ಲಿ ಆವಿರ್ಭವಿಸಿದೆ. ಆದುದರಿಂದಲೇ ಅವುಗಳಲ್ಲಿ ಅವಿಭಾಜ್ಯವಾದ ಶಕ್ತಿ ಪ್ರಜ್ವಲಿಸುತ್ತದೆ. 'ಬವರವಾದರೆ ಹರನ ವದನಕೆ ಬೆವರ ತಹೆ', 'ಮೃತ್ಯು ಮರೆಹೊಕ್ಕಳು ಮಹೇಶ್ವರನ', 'ಕಾಲದಂಡವ ತಿರುಹಿ ಭುವನದಲೂಳಿಗವ ಮಾಡುವ ಕೃತಾಂತನ ಹೋಲುವೆಯ ಪೊಸಬಿಗನು ಹೊಕ್ಕನು ಭೀಮನುರವಣಿಸಿ', 'ಹಡಗು ಜಲಧಿಯಳೋಡಿ ಗಿರಿಗಳನೆಡಹಿ ನುಗ್ಗಾದಂತೆ' 'ಆಲಿಕಲುಗಳ ಕಡಿವೊಡುಕ್ಕಿನ ಚೀಲಣದ ಹಂಗೇಕೆ'?, 'ಕಾಳಕೂಟದ ಕಮಲ ತುಂಬಿಗೆ ಪಥ್ಯವಲ್ಲ', 'ಪಲಾಯನ ತವನಿಧಿ', 'ನರಶರದ ಜುಂಜುವೊಳೆಯಲಿ ಜಾರುವನೆ ಜಾಹ್ನವೀಧರ', 'ಸೀಳಬಹುದೇ ಸೀಸದುಳಿಯಲಿ ಶೈಲವನು'? 'ಬತ್ತಿದ ಕೆರೆಯೊಳಗೆ ಬಲೆಯೇಕೆ?' ವರುಣಶರ ಬಾಯಿರತು ನೀರಡಸಿದುದು', 'ಸುರಧೇನು ನೆರೆಗೊಡ್ಡಾಯ್ತು', 'ಕೋಲಗುರುವಿನ ಮರಣವಾರ್ತಾ ಕಾಲಸರ್ಪನ ತಂದು ಸಂಜಯ ಹೇಳಿಗೆಯನೀಡಾಡಿದನು ಧೃತರಾಷ್ಟ್ರನಿದಿರಿನಲಿ', 'ಕೆಂಡದ ಮಳೆಯ ತಡೆವವೆ ಕೊಡೆ'?' 'ಬೆಳುದಿಂಗಳಲಿ ಮೈ ಬೆವರುವುದೆ'? 'ಪಡುವಣ ಶೈಲ ವಿಪುಲಸ್ತಂಭ ದೀಪಿಕೆಯಂತೆ ರವಿ ಮೆರೆದ', 'ರುಧಿರದ ತಿಲಕನಾದನಲೈ ಧರಾಂಗನೆಗೆ', 'ನುಡಿಗಳ ಕಾಳಕೂಟವ ಬಡಿಸುವೆನು ಕಿವಿಯಾರ ಸವಿಯೆಂದ', 'ಮುಂದಣ ಕಾಳಗದ ಕರ್ಣಾಮೃತದ ಮಳೆಗಾಲ ಮಾದುದು ವಿಲೋಚನದ ಮಳೆಗಾಲವಾಯ್ತೆಂದ', 'ಘನಶೋಕ ವಹ್ನಿಯ ಮೇಹುಗಾಡಿನ ಮನ', 'ಅರಿವಿನ

ಸೆರಗು ಹಾರಿತು', 'ಅಂಬುನಿಧಿ ಮಕರಂದವಾದರೆ ತುಂಬಿಯಾಗನೆ ವಡಬ'? 'ಸಿಡಿಲು ಸಿಗುರೆದ್ದಂತೆ!' 'ರೋಷವೀರಲೆಯಾಯ್ತು', 'ಮಾತು ಹೊಲಸಿನ ಗಂಧವಾಗಿದೆ'–ಇಂತಹವು ನೂರಲ್ಲ, ಸಹಸ್ರಾರು ಉದಾಹರಣೆಗಳನ್ನು ಕೊಡಬಹುದು. ಈ ಒಂದೊಂದು ರೂಪಕದ ಸಿಡಿಲಕುಡಿಯನ್ನು ಹಿಡಿದು ಅನುಭವಿಸಿರಿ! ಪ್ರಾಸಕ್ಕಾಗಿ ಬೇರೆಯ ಕವಿಗಳು ಪ್ರಯತ್ನಿಸಿದರೆ ಈ ಕವಿಗೆ ಪ್ರತಿಯೊಂದು ಪ್ರಾಸಸ್ಥಾನವೂ ಒಂದೊಂದು ಹೊಸ ಹೊಸ ರೂಪಕವನ್ನು ತಂದುಕೊಡುವುದುಂಟು.

'ಅರೆದುದೋ ಪರಬಲವ, ಕಾಲನ
ಹೊರೆದುದೋ, ಮಾರಣದ ಮಂತ್ರವ
ಬರೆದುದೋ, ಬವರಕ್ಕೆ ಬಲುಗೈಗಳನು ಕೈ ನೆಗಹಿ
ಕರೆದುದೋ, ಬಲವೆಲ್ಲ ನೀರಲಿ
ನೆರೆದುದೋ, ಮಾರ್ಬಲದ ವೀರರ
ಹರೆದುದೋ!...............'

"ಇಷ್ಟು ಶ್ರೀಮಂತನಾದ ಕುಮಾರವ್ಯಾಸ ವ್ಯಾಸ ಪಂಪರಾದ ಮೇಲೆ ಬಂದರೇನಂತೆ? ಇದಕ್ಕೆ ಒಂದೇ ಉದಾಹರಣೆಯನ್ನು ಕೊಡಬಹುದು. ಪಂಪಕವಿ ಒಂದು ಪ್ರಸಂಗವನ್ನು ವರ್ಣಿಸುವಾಗ 'ವಿಷವೊಳ್ಳೆಗುಳ್ಳೊಡಮದೊಳ್ಳೆಯೆ ಕಾಳಿಯ ನಾಗನಾಗದು' ಎಂದು ಹೇಳಿದ್ದರೆ ಕುಮಾರವ್ಯಾಸ ಹೇಳಿದ ರೀತಿ ಇದು: 'ಬೆಳುದಿಂಗಳಿನ ಬಿರುಸಾರ ಸುಡುವುದು'. ಈ ರೂಪಕ ಶಕ್ತಿಯಲ್ಲಿ ಪಂಪ ನಾರಣಪ್ಪರಿಗೆ ಸಮಾನತೆ ಇಲ್ಲ. ಅವನ ರಂದ್ರಶಕ್ತಿಗೆ ಏನು ಸಿಕ್ಕಿದರೂ ರೂಪಕಾಹಾರವಾಗಿಬಿಡುತ್ತದೆ. ಆದ್ದರಿಂದ ಅನ್ಯಕವಿಗಳು ಅಗಿದು ಸಿದ್ಧಗೊಳಿಸಿಟ್ಟುಕೊಂಡ ಆಹಾರ ಅವನಿಗೆ ಎಂಜಲು.

'ಆರ ದೀಪನ ಚೂರ್ಣ ಬಲದಲಿ ವೀರ ರುದ್ರನು ಜಗವ ನುಂಗುವ'

ಎನ್ನುವ ಮಾತು ಅವನ ರೂಪಕ ರಂದ್ರಶಕ್ತಿಗೆ ಎತ್ತಿದ ಮಂಗಳಾರತಿಯಾಗಿದೆ. ಇಂತಹ ಶಕ್ತನಾದ್ದರಿಂದಲೇ ಕುಮಾರವ್ಯಾಸ ಅಷ್ಟು ಮಾತಾಳಿಯಾಗಿದ್ದರೂ ದುಸ್ಸಹ್ಯನಾಗಿಲ್ಲ. ಈ ಕವಿ ತನ್ನ ಶಕ್ತಿಯನ್ನು ಹೇಳಿಕೊಳ್ಳುತ್ತ 'ಹಲಗೆ ಬಳಪವ ಪಿಡಿಯದೊಂದಗ್ಗಳಿಕೆ ಪದವಿಟ್ಟಳುಪದೊಂದಗ್ಗಳಿಕೆ', ಎಂದುಕೊಂಡಿದ್ದಾನೆ. ಇವನ ರೂಪಕ ನಟರಾಜ ಶಕ್ತಿಯನ್ನು ಕಂಡಾಗ ಈ ಮಾತುಗಳು ಉತ್ಪ್ರೇಕ್ಷೆಯಲ್ಲ ಎನಿಸುತ್ತದೆ". ಆದರೆ ಒಮ್ಮೊಮ್ಮೆ ಅನಿಸುತ್ತದೆ: "ಈ ಒಂದು ಶಕ್ತಿಯೆ ದೋಷವಾದುದೂ ಉಂಟು. ಪದವನ್ನೆ ಅಲ್ಲ, ಪಂಕ್ತಿಯನ್ನೇ ಅಲ್ಲ, ಸಂಧಿಗಳನ್ನೂ ತೊಡೆದುಹಾಕಿದ್ದರೆ ಅವನ ಖ್ಯಾತಿ ಹೆಚ್ಚುತ್ತಿತ್ತು", ಎಂದು. "ಆದರೂ ಯಾವೆಡೆಯಲ್ಲಿಯೂ ಅಯುಕ್ತ ಪದದ ಪ್ರಸಾರವಿಲ್ಲ; ಅದಕ್ಕಾಗಿ ನಾವು ಕವಿಯನ್ನು ಹೊಗಳಲೇಬೇಕು. ಸಾವಿರಾರು ಮಾತುಗಳು ನಿರಂಕುಶವಾಗಿ ನಡೆದಿದ್ದರೂ ಸಮಯ ಸಂದರ್ಭಗಳಿಗೆ ವಿರೋಧವಾದ ಪ್ರಯೋಗಗಳು ಅಪರೂಪ, ಪ್ರಾಯಶಃ ಇಲ್ಲವೇ ಇಲ್ಲ. ಪಾತ್ರ ಸನ್ನಿವೇಶಗಳಿಗೆ ಅನುಚಿತವಾದ ರಾಗಾಲೋಚನೆಗಳು ಕೆಲವೆಡೆಯಲ್ಲಿ ಕಾಣಬರುತ್ತವೆ. ಆಗ ಕವಿಯ ನಿರ್ಮಾಣ ಕೌಶಲವು ಕಣ್ಣುಮುಚ್ಚಿ ತೂಕಡಿಸಿದ ಹಾಗೆ ತೋರುತ್ತದೆಯೇ ಹೊರತು ಕವಿಯ ನಾಲಗೆ ಕೊಂಕಿ ತೊದಲಿದಂತೆ ಭಾಸವಾಗುವುದಿಲ್ಲ". "ವಾಚಾಳಿಯಂತೆ ಕಾಣಿಸಿಕೊಂಡರೂ ವಸ್ತುತಃ ಅವನು ವಾಗ್ಮಿ. ಕವಿತೆಯ ಹೊದಿಕೆ ಹೆಚ್ಚು ಹೆಚ್ಚು ಮಡಿಕೆಗಳನ್ನು ಪ್ರಕಟಿಸಿದರೂ ಕಾವ್ಯಪುರುಷನ ದೇಹಕ್ಕೆ ಅವೆಲ್ಲವೂ ಹೇಗೋ ಹೊಂದಿಕೊಂಡುಬಿಟ್ಟಿವೆ. ಕುಮಾರವ್ಯಾಸನ ಭಾಷಾ ಪದ್ಧತಿ ಸ್ವತಂತ್ರವಾದದ್ದು,

ಎಲ್ಲಿಯೂ ಅತಂತ್ರವಾಗಿಲ್ಲ. ಕುತಂತ್ರವಂತೂ ಅದಕ್ಕೆ ತೀರ ಹೊರಗು. ಸಂಧ್ಯಾಸಮಯ ಪಶ್ಚಿಮದಿಕ್ಕಿನಲ್ಲಿ ಬಣ್ಣಗಳ ಹರಹು ವಿಪರೀತ; ಸಾಗರದ ನೀಲವರ್ಣದ ನೀರಿನ ರಾಶಿ ವಿಪರೀತ; ವೈಶಾಖದಲ್ಲಿ ಅರಳಿಯ ಮರಕ್ಕೆ ಹಸಿರು ಎಲೆಗಳ ಸಮೃದ್ಧಿ ವಿಪರೀತ; ಹಾಗೆ ನಾರಣಪ್ಪನಲ್ಲಿ ವಚನ ವೈಭವ ವಿಪರೀತ". "ಪದ ಪ್ರಯೋಗದಲ್ಲಿ ಕುಮಾರವ್ಯಾಸ ಮೋಡಿಕಾರ, ಪದಪದಗಳಿಂದ ಭಾವ ಭಾಗೀರಥಿಯನ್ನು ಸೃಜಿಸಿ ನೆಲಕ್ಕೆ ಕರೆತರುವ ಕಲಾ ಭಗೀರಥನವನು. ಯಾವ ಯಾವ ಪದಗಳು ಎಂತೆಂತಹ ರಸದೊರತೆಯನ್ನು ಮಿಡಿಯ ಬಲ್ಲವೆಂಬುದು ಅವನಿಗೆ ಹುಟ್ಟರಿವು". "ಈ ಕವಿಯ ಹೆಸರು ಹೇಳಿದವರಿಗೂ ಶಬ್ದದಾರಿದ್ರ್ಯ ಬಾರದು". "ಕನ್ನಡದ ಭಂಡಾರವನ್ನು ಶ್ರೀವಂತಗೊಳಿಸಿದ ಈ ಕವಿ ಸಿಕ್ಕಿದ ಕಡೆಯಿಂದೆಲ್ಲಾ ಪದಗಳನ್ನು–ರೂಪಕ ಗಳನ್ನೆಂತೋ ಹಾಗೆ ಸೂರೆಗೊಂಡಿದ್ದಾನೆ. ಬೇರೆ ಸಂದರ್ಭದಲ್ಲಿ ಅಶ್ಲೀಲವೆಂದು ಹೇಳಬಹುದಾದ ಮಾತುಗಳನ್ನೂ ಈತ ತನ್ನ ಕಾವ್ಯದಲ್ಲಿ ಸುಂದರವಾಗಿ ಶಕ್ತಿಯುತವಾಗಿ ಬಳಸಿಕೊಂಡಿದ್ದಾನೆ: 'ಗಂಡರೋ ನೀವ್ ಷಂಡರೋ ಹೇಳೆಂದಳಿಂದುಮುಖಿ', 'ಸದರಗಿದರವನರಿದು', 'ಒರಲಬೇಡವೊ ಕುನ್ನಿ', 'ಯಾದವರ ಬಡ ಕರುವೆ', ಈ ನಪುಂಸಕರೊಡನೆ ಹುಟ್ಟಿದ ನಾನು ಮೂಗುಳ್ಳವನೆ?''ಸತ್ಯದ ನುಡಿಗೆ ಹಾದರವಿಲ್ಲ', 'ರೋಷದ ಗೊಡ್ಡು ಗುರು ನಾನಾದೆ', 'ಪಾಂಡುಪುತ್ರರ ಬೊಡ್ಡಿ' ಯಾವ ಪದವೂ ಮಹಾಕವಿಗೆ ಅಶ್ಲೀಲವಲ್ಲ. ಅಶ್ಲೀಲತೆ ಆವರಣದಿಂದ ಸೃಷ್ಟವಾಗುತ್ತದೆಯೇ ಹೊರತು ಒಂದು ಪದ ತನಗೆ ತಾನೆ ಸಂಪೂರ್ಣವಾಗಿ ಅಶ್ಲೀಲವಾಗಿರದು. ಮಹಾಕವಿ, ಆವರಣ ಸೃಷ್ಟಿಯಲ್ಲಿ, ಅದರ ಅಶ್ಲೀಲತೆಯನ್ನು ತೊಳೆದು ಅಪೂರ್ವತೆಯನ್ನು ಹೊಳೆಸುತ್ತಾನೆ. ಕುಮಾರವ್ಯಾಸನಿಗೆ ಈ "ಪತಿತೋದ್ಧರಣಶಕ್ತಿ" ಅದ್ಭುತವಾಗಿದೆ. ಹಾಗೆಯೆ ಸಾಧಾರಣ ಪದಗಳ ಅರ್ಥ ಸೀಮೆಯನ್ನು ಭಾವಶ್ರೀವಂತಿಕೆಯನ್ನು ಹೆಚ್ಚಿಸುವ ಅದ್ಭುತಶಕ್ತಿಯೂ ಹೇರಳವಾಗಿದೆ".

"ಕುಮಾರವ್ಯಾಸ ಎಷ್ಟು ವರ್ಣಿಸಿದರೂ ತೃಪ್ತಿಪಟ್ಟುಕೊಳ್ಳಲಾರ. ಅವನ ಯುದ್ಧ ವರ್ಣನೆಯೇ ಅದಕ್ಕೆ ಸಾಕ್ಷಿ. ಒಂದು ಯುದ್ಧದಂತೆ ಮತ್ತೊಂದು ಯುದ್ಧವಿಲ್ಲ; ಒಬ್ಬನ ಸಾಹಸದಂತೆ, ಶಪಥದಂತೆ ಮತ್ತೊಬ್ಬನ ಶಪಥ, ಸಾಹಸ ಇರದು; ಅಷ್ಟೇ ಏಕೆ, ಅವನ ವೀರರಲ್ಲಿ ಒಬ್ಬೊಬ್ಬರೂ ಒಂದೊಂದು ಬಗೆಯಾಗಿ ಬೈಯುತ್ತಾರೆ. ಕುಮಾರವ್ಯಾಸನಲ್ಲಿ ಅವಹೇಳನವೂ ರೂಪಕ ಮಾಲೆಯಾಗುವುದರಿಂದ ವೀರರ ಬೈಗುಳೂ ಕೂಡ ಗ್ರಾಮ್ಯವಾದರೂ ಬಹು ಸುಂದರ; ಈ ಬೈಗುಳನ್ನು ಕೇಳಬೇಕೆಂದು ಆಸೆ ಪಟ್ಟರೆ ಆಶ್ಚರ್ಯವೇನೂ ಅಲ್ಲ. ಈ ವೀರರ ಅಪಹಾಸ, ಕಟಕಿ, ಎಲ್ಲವೂ ವಿಶಿಷ್ಟವಾದುದು".

"ಕುಮಾರವ್ಯಾಸ ಅರಿಯದ ಹಾಸ್ಯದ ಪ್ರಕಾರವು ಒಂದೂ ಇಲ್ಲ. ಕಟಕಿ, ಬಿರುನುಡಿ, ಕಿರಿನುಡಿ, ವ್ಯಂಗ್ಯ, ಹಾಸ್ಯ, ಸರಸ, ವಕ್ರೋಕ್ತಿ, ಜಾಣ್ನುಡಿ, ಪರಿಹಾಸ ಎಲ್ಲವೂ ಅವನ ಬತ್ತಳಿಕೆಯಲ್ಲಿ ಸಿದ್ಧವಾಗಿರುತ್ತವೆ. ಸರಸವಿನೋದಿಗಳ ಸಕಲ ಸನ್ನಾಹವೂ ಅವನಲ್ಲಿ ಸಿದ್ಧವಿದೆ. ತಾನಾಡದೆ, ಹೆಚ್ಚಾಗಿ ಆಡದೆ, ಆ ಆ ಪಾತ್ರಗಳ ಮೂಲಕ ಆಡಿಸಿ ನಗೆಗೇಡು ಮಾಡುವನು, ನಗೆಗೀಡು ಮಾಡುವನು. ಅದಲ್ಲದೆ ಶೃಂಗಾರ ವ್ಯಂಜಕವಾದ ಹಾಸ್ಯವೇ ರಂಜಕವಾಗಬಹುದೆಂಬ ಹಳೆಯ ಮಾರ್ಗವನ್ನು ಬಿಟ್ಟು ಹೊಸಹಾದಿಯನ್ನು ತುಳಿದಿರುವನು. ಕರುಣವು ಹಾಸ್ಯಕ್ಕೆ ವಿರೋಧಿ ಎಂಬ ಮಾತನ್ನು ಬಲ್ಲನಾದರೂ ತೋರಿಕೆಯ ಕರುಣದೊಳಗಿಂದ ನಿರರ್ಗಲವಾದ ನಿರಂತರವಾದ ನಿಸ್ಸೀಮವಾದ ಹಾಸ್ಯದ ಹೊನಲನ್ನು ಹರಿಯಿಸಿರುವನು". "ಇಷ್ಟು ಸರಸಿಯಾದ ಕವಿ ಆದರೇಕೋ ರಸ ವತ್ತಾಗಿ ಅಳಲಾರ ಎಂಬ ಭಾವನೆಗೆ ಪಕ್ಕಾಗಿದ್ದಾನೆ. ಅಳಲಾರ ಎಂದರೆ ಅಳಿಸಬಲ್ಲ ಎಂದು ಹೇಳಬೇಕಾಗುತ್ತದೆ. ಇವನಿಗಿಂತ ಶಕ್ತಿಪೂರ್ಣವಾಗಿ ಅಳಿಸಬಲ್ಲವರಾರು? ಕರುಣರಸದ ಮಹಾಸ್ರೋತವನ್ನು ಇವನಿಗಿಂತ ಶಕ್ತಿ

ಯಂತವಾಗಿ ಎಷ್ಟು ಜನ ಹರಿಸಬಲ್ಲರು? ಇದಕ್ಕೆ ಅಭಿಮನ್ಯುವಿನ ವೀರಮರಣದ ಪ್ರಸಂಗ, ಕರ್ಣಾವಸಾನ ಪ್ರಸಂಗಗಳೇ ಸಾಕ್ಷಿ".

"ತನ್ನ ಕೃತಿಯನ್ನು 'ವಿರಹಿಗಳ ಶೃಂಗಾರ' ಎಂದ ಕವಿ ಕುಮಾರವ್ಯಾಸ ಉಳಿದ ಬಹಳ ಕವಿಗಳಂತೆ ಅತಿ ಶೃಂಗಾರ ಪ್ರೀತನಾಗದೆ ಹದವರಿತು ತನ್ನ ಕಾವ್ಯದಲ್ಲಿ ಆ ರಸವನ್ನು ಹರಿಸಿದ್ದಾನೆ...ಕುಮಾರವ್ಯಾಸ ಯೋಗಿಯ ಕಾವ್ಯಪದ್ಧತಿಯಲ್ಲಿ ಹಲವು ದೋಷಗಳಿರಬಹುದು. ಆದರೆ ಶೃಂಗಾರಪ್ರಿಯತೆಯಿಂದ ತನ್ನ ಕೃತಿಯನ್ನು ಹದಗೆಡಿಸಿದನೆಂದು ಮಾತ್ರ ಆವನನ್ನು ದೂರುವ ಹಾಗಿಲ್ಲ. ಬಿಂಕ ಕವಿಗಳು ಕ್ಲೇಶಪಟ್ಟು ಸಾಧಿಸುವ ಹಲವು ವರ್ಣನೆಗಳಿಗೆ ಇಲ್ಲಿ ಸ್ಥಳವೇ ಸಿಕ್ಕಿಲ್ಲ. ಒಂದು ವೇಳೆ ಅಂಥ ವಿಷಯ ಬಂದರೂ ಸಂದರ್ಭೋ ಚಿತವಾಗಿರುತ್ತದೆ.........ಭಾರತದಲ್ಲಿ ಶೃಂಗಾರವು ಅಮುಖ್ಯವಾದ ರಸ. ಅದನ್ನು ಆ ಮಟ್ಟದಲ್ಲೇ ನಿಲ್ಲಿಸಿ ಸಿದರೂ ನಿರೂಪಣೆಯನ್ನು ಲೋಕೋತ್ತರವಾಗಿ ನಿರ್ವಹಿಸುವ ಶಕ್ತಿ ಕುಮಾರವ್ಯಾಸನಂಥ ಮಹಾಕವಿಗೆ ಮಾತ್ರ ಸಾಧ್ಯ".

"ಪ್ರಕೃತಿವರ್ಣನೆಯಲ್ಲಿ ಈ ಕವಿ ಅಂಧನಲ್ಲದಿದ್ದರೂ ಉದಾಸೀನ, ವಿರಕ್ತ". "ಅಂದರೆ ಪ್ರಕೃತಿಯನ್ನೇ ಆರಾಧ್ಯವಸ್ತುವನ್ನಾಗಿ ಮಾಡಿಕೊಂಡಿಲ್ಲವೆಂದಷ್ಟೆ. ಮಾನವ ಪ್ರಕೃತಿಯ ಚಿತ್ರಣಕ್ಕೆಷ್ಟು ಬೇಕೋ ಅಷ್ಟು ಮಾತ್ರ ಪ್ರಕೃತಿಯನ್ನು ಚಿತ್ರಿಸುತ್ತಾನೆ. ವಿರಹ ಹತ ಕೀಚಕನಿಗೆ 'ಬಲಿದ ಚಂದ್ರಿಕೆ ಕರಗಿ ಕಡುಗಿದ ತವರ ವಾದುದು' ಎನ್ನುತ್ತಾನೆ. ಭೀಷ್ಮಾವಸಾನದಲ್ಲಿ ಅಸ್ತಾಚಲಗತ ಸೂರ್ಯ 'ಪಡುವಣ ಶೈಲ ವಿಪುಲಸ್ತಂಭ ದೀಪಿಕೆಯಂತೆ' ಮೆರೆದ ಎನ್ನುತ್ತಾನೆ. ಈ ಮಾತುಗಳಿಗೆ ದೀರ್ಘವಾದ ವ್ಯಾಖ್ಯಾನ ಬರೆಯಬಹುದು. ಇಷ್ಟಲ್ಲದೆ ರಮಣೀಯವಾದ ಆದರೆ ಮಿತವಾದ ಪ್ರಕೃತಿ ವರ್ಣನೆಯನ್ನು ನೋಡಿ: ವಸಂತಕಾಲ ಹೇಗಿತ್ತೆಂದರೆ 'ತೆಗೆದುದಗ್ಗದ ತಂಪು, ನದಿ ಸರಸಿಗಳ ತಡಿಯಲಿ ಹೆಜ್ಜೆಯಾದುದು, ಹಗಲು ಹಾವಸೆ ಹರಿದು ಹೊಕ್ಕರಿಸಿದುದು ಹಿಮಜಲವ, ಸೊಗಸಿದವು ನೆಳಲುಗಳು, ದೂರಕೆ ಸೆಗಳಿಕೆಗಳೇರಿದವು, ತಂಗಾಳಿಗೆ ವಿಹಾರಿಸಿ ಮೈಯ ತೆತ್ತುದು ಕೂಡೆ ಜನ ನಿಕರ'. ಮಳೆಗಾಲವನ್ನು ವರ್ಣಿಸುವ ಬಗೆ ಹೀಗೆ: 'ಉಡುಗಣದೊಡ್ಡ ಕಾಣೆನು. ಮುಗಿಲ ಬೆನಕಗೆ ಲಡ್ಡುಗೆಗಳಾದುವು ಸಮಸ್ತ ಗ್ರಹ ಸಂತಾರೆಗಳು', ಸೂರ್ಯೋದಯ ತಾವರೆಯೆದೆಯ ಬೀಯಗವನ್ನು ತೆರೆಯುತ್ತದಂತೆ—ಇತ್ಯಾದಿ.

"ಮಾನವ ಪ್ರಕೃತಿಯನ್ನು ಮಾತ್ರ ಇವನಂತೆ ಬಹಳ ಜನ ಚಿತ್ರಿಸಿಲ್ಲ". "ಪಶುವಿನಿಂದ ಸ್ಥಿತಪ್ರಜ್ಞನ ವರೆಗೆ ಕುಮಾರವ್ಯಾಸಯೋಗೀಂದ್ರ ಅರಿಯದ ಮನೋವೃತ್ತಿ ಇಲ್ಲ". "ಕೇವಲ ಬಾಹ್ಯವರ್ಣನೆಯಲ್ಲೆ— 'ವಿಭಾವಾನುಭಾವಗಳ ಚಿತ್ರಣದಲ್ಲೇ—ಪಾತ್ರಗಳ ಮನಃಸ್ಥಿತಿಯನ್ನು ಘನೀಕೃತವಾದಂತೆ ಚಿತ್ರಿಸಬಲ್ಲನು. ಊಹೆದೆಗಹಿನ ಕಂಬನಿಯ ತನಿಮೋಹರದ ಘನಶೋಕ ವಹ್ನಿಯ ಮೇಹುಗಾಡಿನ ಮನದ ಕೌರವನಿತ್ತ ನೋಲಗವ', 'ಆರು ಮರುಗರು, ಘೋರ ವಿಷ ಮುನಿವರನ ಹೃದಯವ ಗೋರಿತೇನೆಂಬೆನು ಲತಾಂಗಿ ಯರಳಲ ಕಳವಳವ', 'ತನುವ ಮರೆದನು ಪುಳಕ ಜಲದಲಿ ನೆನೆದು ನಾರಾಯಣನ ಪದ ದರುಶನದ ಹರ್ಷಾ ರಣ್ಯದಲಿ ಮನ ಹೊಲಬುದಪ್ಪಿದನು' ಹೀಗೆ ನೂರಾರು ಪಂಕ್ತಿಗಳನ್ನು ಉದಾಹರಿಸಬಹುದು.

"ಕುಮಾರವ್ಯಾಸನ ಪಾತ್ರಗಳಲ್ಲಿ ಅದ್ಭುತಶಕ್ತಿಯ ಸಂಚಾರವನ್ನು ಕಾಣುತ್ತೇವೆ. ಅವನು ಸೃಷ್ಟಿಸಿದ ಭೀಮ, ದ್ರೌಪದಿ, ಅಭಿಮನ್ಯು, ಉತ್ತರ, ಕರ್ಣ, ಅರ್ಜುನ, ಕೃಷ್ಣ, ಭೀಷ್ಮ, ದ್ರೋಣ, ವಿದುರ, ಕೌರವರೇ ಇದಕ್ಕೆ ಸಾಕ್ಷಿ. ಇವರೆಲ್ಲ ಸಚೇತನ ಪಾತ್ರಗಳಾಗಿ ನಡೆದಾಡುತ್ತಾರೆ. ಜಿಗುಟಿದರೆ ರಕ್ತಸೋರುವ ಮಟ್ಟಿಗೆ

ಪಾತ್ರಗಳು ತುಂಬುಜೀವಿಯಾಗಿವೆ. ಆದರೆ ಒಮ್ಮೊಮ್ಮೆ ಶಕ್ತಿಯ ಆಧಿಕ್ಯದಿಂದ ಮೇರೆಮೀರಿ ನಡೆಯುತ್ತಾರೆ. ನಾರಣಪ್ಪನ ಪಾತ್ರಗಳಲ್ಲಿ ಅದ್ಭುತಶಕ್ತಿಯ ಸಂಚಲನೆ ಇರುವಂತೆಯೆ ಸಂಯಮವೂ ಇದ್ದಿದ್ದರೆ ಪ್ರಪಂಚದ ಸಾಹಿತ್ಯದಲ್ಲಿ ನಮ್ಮ ಕವಿ ಅದ್ವಿತೀಯನಾಗುತ್ತಿದ್ದ. ಆತನಿಗೆ ಪಂಪನ ಸಂಯಮ ಬೇಕು ಎಂದು ಎಷ್ಟೋ ವೇಳೆ ಅನ್ನಿಸುತ್ತದೆ. ಇತರ ವರ್ಣನೆಗಳಲ್ಲಿ ಈ ಸಂಯಮವಿಲ್ಲದಿದ್ದರೆ ಚಿಂತೆ ಇಲ್ಲ; ಮಾನವ ವರ್ತನೆಯ ಚಿತ್ರಣದಲ್ಲಿ ಇದು ಬೇಕೇ ಬೇಕು. ಪಂಪನ ಭೀಷ್ಮರೂ ನಾರಣಪ್ಪನ ಭೀಷ್ಮರೂ ಸೇನಾಧಿಪತ್ಯ ಸ್ವೀಕರಣ ಸನ್ನಿವೇಶದಲ್ಲಿ ಕರ್ಣನ ವಿಚಾರವಾಗಿ ಹೇಗೆ ವರ್ತಿಸುತ್ತಾರೆ ಎಂಬುದನ್ನು ನೋಡಿದರೆ ಮೇಲಿನ ಮಾತಿನ ಸತ್ಯ ಗೋಚರಿಸುತ್ತದೆ. ಹೀಗಾಗಿ ಕುಮಾರವ್ಯಾಸನ 'ಶೈಲಶಿಲ್ಪ'ಗಳಲ್ಲಿ ತೋಲ ತಪ್ಪುತ್ತದೆ. ಇದರಿಂದ ಒಂದು ಲಾಭವಾಗಿರುವುದೂ ಉಂಟು. ಅವನ ಪಾತ್ರಗಳಲ್ಲಿ 'ಪ್ರಾಕೃತ ಸಮೃದ್ಧಿ' ಯಿರುವುದರಿಂದ ನಾವಲ್ಲಿ 'ಪ್ರಾಕೃತಿಕ ರೂಕ್ಷತಾ ರಮಣೀಯತೆ' ಯನ್ನು ಕಾಣುತ್ತೇವೆ. ಹಾಗಾಗಿ ಅಲ್ಲಿ ಮಾನವ ಸ್ವಭಾವದ ಅತಿ ಸಹಜ ಸ್ವರೂಪದ ಅನುಭವ ಆಗುತ್ತದೆ".

"ಭಕ್ತಕವಿಯಾದ ಕುಮಾರವ್ಯಾಸ ಭಗವಂತ ಮಹಿಮೆಯ ವರ್ಣನೆಯ ಅತಿರೇಕದಲ್ಲಿ ಮಾನವತೆ ಯನ್ನು ಮರೆಯುತ್ತಾನೆ ಎಂಬ; ಅವನು ಬರಿಯ ದೈವಚಾಲಿತ ಪಾತ್ರರನ್ನು ಚಿತ್ರಿಸಿದನೆ ವಿನಾ ಮಹಾಭಾರತದ ವೀರರನ್ನಲ್ಲ ಎಂಬ ಭ್ರಾಂತಿ ಬರುವುದುಂಟು. ಆದರೆ ಪೌರುಷದ ಪರಾಕಾಷ್ಠೆಯ ಚಿತ್ರವನ್ನು ಬೇಕಾದರಿಲ್ಲಿ ನೋಡಿ:

ಅಭಿಮನ್ಯು ಹೇಳುತ್ತಾನೆ:

'ಬವರವಾದರೆ ಹರನ ವದನಕೆ ಬೆವರ ತಹೆನವಗಡಿಸಿದರೆ ವಾ
ಸವನ ಸದೆವೆನು ಹೊಕ್ಕಡಹುದೆನಿಸುವೆನು ಭಾರ್ಗವನ;
ಜವನ ಜವಗೆಡಿಸುವೆನು ಸಾಕಿನ್ನಿವರವರಲೇನರ್ಜುನನು ಮಾ
ಧವನು ಮುನಿದಡೆ ಗೆಲುವೆನಂಜದೆ ರಥವ ಹರಿಸೆಂದ'

ಭೀಮ ಹೇಳುತ್ತಾನೆ–

'ಭೀಮ ಕಷ್ಟವನೆಸಗಿದನು ಹಾಯೆಂದರಾದೊಡೆ ಮುಸುಂಡನಮರಾದ್ರಿಯಲಿ ತೇವೆನು ದೇವ ಸಂತತಿಯ', 'ಕೃಷ್ಣ ಹಾಯ್ದರೆ ಘನಮುರಾರಿಯ ಮೀರುವೆನು' ಎಂದು. ಕೃಷ್ಣಪ್ರಿಯ ಅರ್ಜುನನನ್ನು ಕೇಳಿ:

'ಕುರುಬಲವ ಬಿಟ್ಟರೆ ಯುಧಿಷ್ಠಿರನರಮನೆಯ ಹೊಕ್ಕರೆ, ಮುರಾರಿಯ
ಶರಣುವೊಕ್ಕರೆ ಸರ್ವಥಾ ಕೊಲ್ವೆನು ಜಯದ್ರಥನ'

ಇಲ್ಲೆಲ್ಲಾ ನಾವು ಕಾಣುವುದು ನಿರ್‌ಮಾನುಷತೆಯನ್ನಲ್ಲ, ಅಮಾನುಷತೆಯನ್ನೂ ಅಲ್ಲ; ಪರಮ ಪೌರುಷವನ್ನು. ಆದರೆ ಈ ಪೌರುಷ ಯಾವ ಮಿತಿಯಾಚೆಯಲ್ಲಿ ಅಪೌರುಷೇಯದ ಮುಂದೆ ಹೇಗೆ ತಲೆ ಬಾಗುತ್ತದೆಂಬುದನ್ನು ಕುಮಾರವ್ಯಾಸ ಅದ್ಭುತವಾಗಿ ಕಂಡಿದ್ದಾನೆ.

ಆದ್ದರಿಂದಲೇ ಅವನು ಕಂಡರಿಸಿದ ಭಕ್ತರಾರೂ ಪೌರುಷವಿಹೀನರಲ್ಲ, ನಿರ್ಮಾನುಷರಲ್ಲ. ಅರ್ಜುನ ಭೀಷ್ಮ, ಭೀಮ, ಧರ್ಮರಾಯ, ವಿದುರ, ದ್ರೌಪದಿ, (ಕರ್ಣ ಕೂಡ) ಅವನ ಭಕ್ತರಾದರೂ ಅವರಾದರೂ ಮಾನುಷಶಕ್ತಿ ವಿರಾಮರಲ್ಲ. ತಮ್ಮೆಲ್ಲ ಶಕ್ತಿಯಿಂದ ಕಾದುತ್ತಾರೆ, ಏದುತ್ತಾರೆ, ತಮ್ಮ ಕೈಮೀರಿದಾಗ ಭಗವದ್ ಶಕ್ತಿಯ ಮರೆಹೋಗುತ್ತಾರೆ. ಸೈಂಧವ ವಧೆಯಲ್ಲಿ ಶ್ರೀಕೃಷ್ಣನಿಗೆ ಮೊರೆಗೊಂಡ ಅರ್ಜುನನ ಬಗೆ ಇಂತಹುದು.

ಭಾರತ ಯುದ್ಧದಲ್ಲಿ ಕೈದುವನ್ನು ಹಿಡಿಯುವುದಿಲ್ಲವೆಂದು ಶಪಥಮಾಡಿದ್ದ ಶ್ರೀಕೃಷ್ಣನ ಕೈಯಲ್ಲಿ ಚಕ್ರ ಹಿಡಿಸಿದ ಭೀಷ್ಮ ಪೌರುಷ ಕೊನೆಗೆ ತನ್ನ ಭಕ್ತಿನಾರಾಯಣಾಸ್ತ್ರದಿಂದ ಚಕ್ರಧಾರಿಯನ್ನು ಗೆದ್ದಬಗೆ ಅಂತಹದು! ಎದೆಯನ್ನು ಭೇದಿಸಿದ್ದ ಬಾಣವು ಪ್ರಾಣಹೀರುತ್ತಿರುವಾಗ ಇನ್ನೂ ಅಹತನಾಗಿದ್ದ ತನ್ನ ಬಳಿಗೆ ಬಂದ ಬ್ರಾಹ್ಮಣ ವೇಷಧಾರಿ ಶ್ರೀಕೃಷ್ಣನಿಗೆ ತನ್ನ ಕರ್ಣಕುಂಡಲ, ಅಮೃತೋದಕಗಳನ್ನು ಧಾರೆಯೆರೆದ ಶ್ರೀಕರ್ಣನ ಮಹಾತ್ಯಾಗ ಪೌರುಷವು ಭಗವದರ್ಪಿತವಾದ ಮಹಾದ್ಭುತ ವಿಧಾನ ಅಂತಹದು. ಒಟ್ಟಿನಲ್ಲಿ ಮಹಾಕವಿ ಕುಮಾರವ್ಯಾಸನ ಪಾತ್ರಗಳು ಮಾನುಷ ದೈವಶಕ್ತಿಗಳ ರಂಗಸ್ಥಲವಾಗಿವೆ; ಸಂಗಮಸ್ಥಾನವೂ ಆಗಿವೆ".

"ಮಹಾಭಾರತದ ಪ್ರಧಾನ ಪಾತ್ರಗಳನ್ನು ತನ್ನ ಕಾವ್ಯದ ಕೊನೆಯಲ್ಲಿ ಹೆಸರಿಸುವಾಗ ಪಂಪಕವಿ ಹೀಗೆನ್ನುತ್ತಾನೆ:

'ಚಲದೊಳ್ ದುರ್ಯೋಧನಂ, ಸನ್ನಿಯೊಳ್ ಇನತನಯಂ, ಗಂಡಿನೊಳ್ ಭೀಮಸೇನಂ,
ಬಲದೊಳ್ ಮದ್ರೇಶನ್, ಅತ್ಯುನ್ನತಿಯೊಳ್ ಅಮರಸಿಂಧೂದ್ಭವಂ ಚಾಪವಿದ್ಯಾ
ಬಲದೊಳ್ ಕುಂಭೋದ್ಭವಂ, ಸಾಹಸದ ಮಹಿಮೆಯೊಳ್ ಫಲ್ಗುಣಂ, ಧರ್ಮದೊಳ್ ನಿ
ರ್ಮಲಚಿತ್ತಂ ಧರ್ಮಪುತ್ರಂ; ಮಿಗಿಲ್ ಇವರ್ಗಳಿನೀ ಭಾರತಂ ಲೋಕಪೂಜ್ಯಂ'

"ಕುಮಾರವ್ಯಾಸನ ಪಾತ್ರಸೃಷ್ಟಿಯನ್ನು ವಿವೇಚಿಸುವಾಗ ಈ ಮಾಲಿಕೆಯಲ್ಲಿ ಅವನವರೆ ಆದ, ವೈಶಿಷ್ಟ್ಯ ಪೂರ್ಣರಾದ, ಶ್ರೀಕೃಷ್ಣ, ದ್ರೌಪದಿ, ಅಭಿಮನ್ಯು, ಉತ್ತರಕುಮಾರರನ್ನು ಸೇರಿಸಬೇಕಾಗುತ್ತದೆ. ಒಂದರ್ಥದಲ್ಲಿ ಈ ಪಾತ್ರಗಳು ಕುಮಾರವ್ಯಾಸನಿಂದಲೆ ನಮಗಿಷ್ಟು ಪರಿಚಿತವಾಗಿರುವುದು ಎಂದರೂ ಸಲ್ಲುತ್ತದೆ.

"ಶ್ರೀಕೃಷ್ಣನ ಪಾತ್ರ ಕುಮಾರವ್ಯಾಸನ ಭಾರತದಲ್ಲಿ ಅತ್ಯಂತ ಪ್ರಧಾನವೂ ವಿಶಿಷ್ಟವೂ ಸರ್ವ ಪ್ರೇರಕವೂ ಚೋದಕವೂ ಆದುದು. ಕವಿಯ ದೃಷ್ಟಿಯಲ್ಲಿ ಆತ ಯಾವುದೋ ಒಂದು ಪಾತ್ರವಲ್ಲ; ನಾಯಕಪಾತ್ರವಷ್ಟೆ ಅಲ್ಲ. ಆದರೆ ಪಾತ್ರಧಾರಿಯಾದ ಸೂತ್ರಧಾರಿ. ಹಾಗೆ ಅಲ್ಲದೆ ಅವನು ನಾಯಕಮಾತ್ರ ನಾಗಿದ್ದರೆ ಕಾವ್ಯದ ಉಳಿದ ಪಾತ್ರಗಳಂತೆ, ಸಾಮಾನ್ಯವಾಗಿ ಉಳಿದ ಕಾವ್ಯಗಳ ನಾಯಕರಂತೆ, ಅವನೂ ಒಂದಿನಿತಾದರೂ ತೊಳಲಾಟಕ್ಕೆ ಒಳಗಾಗುತ್ತಿದ್ದ. ಆದರೆ ಕುಮಾರವ್ಯಾಸನ ಕೃಷ್ಣ ಅವನ ಕಾವ್ಯಚೋದಕ ಶಕ್ತಿಯಾಗಿರುವಂತೆಯೇ, ಶ್ರವಣ ಸುಧಾ ವಿನೂತನ ಕಥನ ಕಾರಣನಾಗಿರುವಂತೆಯೇ, ಆ ಅವನ ಭಾರತದ ಪ್ರೇರಕ, ಕಾರಕಶಕ್ತಿಯೂ ಆಗಿದ್ದಾನೆ. ಎಲ್ಲೆಲ್ಲಿ ಏನೇನು ಆಗಬೇಕಾದರೂ ಅವನ ಕೈವಾಡವಿಲ್ಲದೆ ನಡೆಯುವುದೆ ಇಲ್ಲ. ಹೀಗೆ ಅವನೇ ಎಲ್ಲವನ್ನೂ ಚೋದಿಸಿ ದಿಗ್ದರ್ಶಿಸಿದರೂ ತಾನು ಮಾತ್ರ ಎಲ್ಲೂ ಅತಿ ಎನ್ನುವಂತೆ, ವಿಪರೀತ (Abnormal)ಎನ್ನುವಂತೆ ವರ್ತಿಸುವುದಿಲ್ಲ. ತನ್ನ ಅತಿಮಾನವತೆಯನ್ನು ಮನುಷ್ಯ ಕಟ್ಟಳೆಗೆ ಅಗೌರವ ವಾಗದಂತೆ ಪ್ರಕಾಶಗೊಳಿಸುತ್ತಾನೆ. 'ನರ ನಾಟಕವ ತಾನೇ ನಟಿಸಿ ತೋರಿದನು' ಎಂದು ಕವಿ ಹೇಳುತ್ತಾನೆ. ಕುಂತಿ ಬಂದರೆ ಕುಳಿತಿದ್ದವನು ಜಗ್ಗನೆದ್ದು ನಮಸ್ಕರಿಸುತ್ತಾನೆ. ಪಾಂಡವರು ತನ್ನ ಪರಮಭಕ್ತರಾಗಿದ್ದರೂ 'ಆಳೊಡೆಯನೆಂದೆಂಬ ಭೇದವ ಬೀಳುಕೊಟ್ಟೇ ನಡೆಸುತಿರ್ದನು ತನ್ನ ಮೈದುನರ–'

ತನ್ನ ಭಕ್ತರಿಗಾಗಿ ಶ್ರೀಕೃಷ್ಣ ಕರಗುತ್ತಿದ್ದನಂತೆ; ತನ್ನ ತಂದೆ ತಾಯಿ, ಮನೆಮಂಠ, ಮಡದಿ ಮಕ್ಕಳನ್ನೂ ಗಮನಿಸುತ್ತಲಿರಲಿಲ್ಲವಂತೆ! 'ಒಲಿದವರನುಜ್ಜೀವಿಸುವ ಬಗೆ ಬಲುಹು ಮುರಮಥನಂಗೆ ಮುನಿದೊಡೆ ಹಣೆಯ ಬರಹವ ತೊಡೆವನಲ್ಲದೆ ಬಳಿಕ ಸೈರಿಸನು' ಎಂದೂ, 'ಕೈತವದ ಶಿಕ್ಷಾಗುರು', 'ಸೆಣಸು ಸೇರದ

ದೇವ' ಎಂದೂ ಶ್ರೀಕೃಷ್ಣನನ್ನು ಅರಿತ ನಾವು ಅವನ ಮಹಾಕರುಣೆಯ ವಿಶ್ವಾಲಿಂಗನವನ್ನು ಮರೆಯುತ್ತೇವೆ. ಆದರೆ ಅವನ ಆ ಸ್ವರೂಪವನ್ನು ಕಂಡ ಅವನ ತಂದೆ ವಸುದೇವ, ಪಾಂಡವರಿಗೆ ಅದನ್ನು ಹೇಳುತ್ತಾನೆ ಕೇಳಿ:

'ಲೋಗರೇ ನೀವೆಮಗೆ, ನಿವಗರಗಾಗಿ ಕರಗುವುದು ನಿಲಲಿ, ತನ
ಗಾಗದವರಿಗೆ ತನ್ನ ತೆರುವನು, ಕೊಲುವ ಹಗೆಗೊಲಿವ;
ಲೋಗರೆನ್ನವರೆಂದು ಲೋಗರಿಗಾಗಿ ಬದುಕುವೆನೆಂಬ ಬಲುಗೈ
ಬಾಗಿ ಕೃಷ್ಣನನೇನ ಹೇಳುವೆನೆಂದನರಸಂಗೆ'

ನಾವೆಲ್ಲ ತಿಳಿದಿರುವ ಶ್ರೀಕೃಷ್ಣನಿಗೂ ತಂದೆಯ ವಾತ್ಸಲ್ಯ ಕಂಡ ಕುಮಾರ ಭಗವಂತನಿಗೂ ಎಷ್ಟು ವ್ಯತ್ಯಾಸವಿದೆ! ಕುಮಾರವ್ಯಾಸ ಬಹುಮಟ್ಟಿಗೆ ಕಂಡರಿಸಿರುವ ಚಿತ್ರ ಇದೇ ಆಗಿದೆ. ಕರ್ಣನಿಗೂ ತನ್ನ ನಿಜ ಪದವನ್ನಿತ್ತ ಭಗವಂತ, ಕೌರವನಿಗೂ ಒಮ್ಮೊಮ್ಮೆ ತನ್ನನ್ನು ತೋರಿ ಮೆರೆದ ಮಹಿಮ ಇವನಲ್ಲದೆ ಮತ್ತೆಂಥವನು.

ಇಷ್ಟೆಲ್ಲ ಮಹಿಮಾವಂತ ಹೇಗೆ ಮುಗ್ಧನಾಗಿ ವರ್ತಿಸುತ್ತಾನೆ! ಮೇಲೆಹೇಳಿದ ತಂದೆಯ ಮಾತನ್ನು ಕೇಳಿದೊಡನೆ ಅವನು ತೋರಿದ ನಾಚಿಕೆ ಬಹು ಮನೋಜ್ಞವಾದುದು.

'ಬೊಪ್ಪನವರೇಯೆಮ್ಮ ದೂರದೆಯಿಪ್ಪವರು, ತಾನಲ್ಲ, ಸಾಕಿ
ನ್ನೊಪ್ಪದಲಿ ಬಾಯೆಂದು ಮುರರಿಪು ಕರೆದನವನಿಪನ'

ತಂದೆಯ ವಾತ್ಸಲ್ಯಕ್ಕೆ ಧರ್ಮರಾಜನೊಡನೆ ಅವನಾಡಿದ ಮಾತಿದು. ಹಾಗೆಯೇ ಮುಂದೆ ಭೀಷ್ಮನ ಮೇಲೆ ಚಕ್ರಧಾರಿಯಾಗಿ ಪ್ರಲಯೋಲ್ಕೆಯಂತೆ ಎರಗುತ್ತಿರುವಾಗ ತನ್ನ ಮಹಾ ಪ್ರಮಾದವನ್ನು ಆ ಭೀಷ್ಮ ಭಕ್ತಿ ಎಚ್ಚರಿಸಲು ನಾಚಿ ಹಿಂಬರುತ್ತಾನೆ. 'ನಚ್ಚಿನಾಳಿನ ಬಿನ್ನಹಕೆ ಮನದೊಳು ನಾಚಿ ಚಕ್ರವ ಮುಚ್ಚಿದನು' ಎಂದು ಕವಿ ಮನೋಜ್ಞವಾಗಿ ಹೇಳುತ್ತಾನೆ. ಹೀಗೆ ದೇವದೇವನಾದರೂ ಶ್ರೀಕೃಷ್ಣ ಶ್ರೇಷ್ಠ ಮಾನವ ಭಾವ ಗಳನ್ನು ಪ್ರದರ್ಶಿಸುವುದನ್ನು ಕಾಣುತ್ತೇವೆ.

ಮುಂದೆ ಸೈಂಧವ ವಧೆಯ ಹಿಂದಿನ ದಿನ, ಪಾಶುಪತಾಸ್ತ್ರವನ್ನು ಪಾರ್ಥನಿಗೆ ಹಸ್ತಗತವಾಗಿಸಲು ತಾನೆ ಅವನನ್ನು ಕೈಲಾಸಕ್ಕೆ, ಅವನ ಧ್ಯಾನಸ್ಥಿತಿಯಲ್ಲಿ, ಕರೆದುಕೊಂಡು ಹೋಗಿ ಶಿವನಿಂದ ಆ ಮಂತ್ರವನ್ನು ಪಡೆಸಿಕೊಡುತ್ತಾನೆ. ತಾನೇ ಏಕೆ ಆ ಶಕ್ತಿಯನ್ನು ಕೊಡಬಾರದಾಗಿತ್ತು? ಆಯಾ ಶಕ್ತಿಗಳು ಆಯಾ ಪಾತ್ರ ಗಳಲ್ಲೆ ಹರಿದುಬರಬೇಕೆಂಬುದನ್ನು ಉಲ್ಲಂಘಿಸದೆ ನಡೆಯುತ್ತಾನೆ, ಶ್ರೀಕೃಷ್ಣ. ಹೀಗೆ ಕುಮಾರವ್ಯಾಸ ಕಂಡ ಕೃಷ್ಣ ಭಾರತದ ಸೂತ್ರಧಾರನಾಗಿದ್ದರೂ ಪಾತ್ರಧಾರಿಯಾದ ಸೂತ್ರಧಾರನಾಗಿದ್ದಾನೆ".

ಅರ್ಜುನ ಶ್ರೀಕೃಷ್ಣನ ಪರಮಮಿತ್ರ, ಭಕ್ತ; ಗುರುದ್ರೋಣರ ಪ್ರೇಮದ ಶಿಷ್ಯ; ದಶನಾಮವಂತನಾಗಿ ಪ್ರಸಿದ್ಧನಾದ ಇವನು ಶಿವನನ್ನು ಭಯಭರಿತ ವೀರಭಕ್ತಿಯಿಂದ ಗೆದ್ದು ಸಿದ್ಧನಾಗಿದ್ದರೂ ಅಣ್ಣನ ಆಜ್ಞೆ ಯನ್ನು ಮಾತ್ರ ಮೀರುತ್ತಿರಲಿಲ್ಲ. 'ತಮ್ಮಣ್ಣನಾಜ್ಞೆಯಲಿ ಭ್ರಮಿತನಾಗಿಹನು' ಎಂದು ದ್ರೌಪದಿ ಹಂಗಿಸು ವಷ್ಟು ಅಣ್ಣನ ಭಕ್ತ. ತನ್ನ ಪ್ರಿಯತಮನಾದ ಏಕೈಕ ಪುತ್ರನ ಮರಣದಲ್ಲಿ ಅಣ್ಣನ ಮೇಲೆ ಕೋಪಿಸಿಕೊಳ್ಳಲು ಕಾರಣವಿದ್ದರೂ ಅವನಾಡುವ ವಿಸ್ಮಯಕಾರಿಯಾದ ಸಂಯಮದ ಮಾತುಗಳನ್ನು ನೋಡಬಹುದು. ಆದರೂ ತನ್ನನ್ನೇನಾದರೂ ಅಲ್ಲಗಳೆದರೆ ಮಾತ್ರ ಯಾರನ್ನೂ ಲಕ್ಷಿಸುತ್ತಿರಲಿಲ್ಲ. ಅಂತಹ ಅಣ್ಣನ ಮೇಲೆ ಕತ್ತಿಯನ್ನು ಹಿರಿದುಕೊಂಡು ಹೋಗುತ್ತಾನೆ. ಈ ಪ್ರಸಂಗವಂತೂ ಮಾನವ ಹೃದಯದ ಮಹಾಭಯಂಕರ

ಸ್ವಭಾವದ ಸತ್ಯ ಚಿತ್ರಣವಾಗಿದೆ. (ಕಾರಣಾಂತರದಿಂದ ಈ ಅಂಶವನ್ನು ಪಂಪಕವಿ ಬಿಟ್ಟುಬಿಟ್ಟಿದ್ದಾನೆ) ಹಾಗೆಯೇ ಭೀಮನಮೇಲೂ, ಅಷ್ಟೇ ಏಕೆ, ಭಗವಾನ್ ಶ್ರೀಕೃಷ್ಣನ ಮೇಲೂ, ಕೋಪವಲ್ಲ, ಅಸಮಾಧಾನ ಅವನಿಗುಂಟಾಗುತ್ತಿತ್ತು. ಆದರೆ ಕುಮಾರವ್ಯಾಸನ ಅರ್ಜುನನ ವೈಶಿಷ್ಟ್ಯವು ಕಾಣುವುದು ಪ್ರಧಾನವಾಗಿ ಊರ್ವಶಿಯ ಪ್ರಸಂಗದಲ್ಲಿ, ಕರ್ಣಾವಸಾನ ಪ್ರಸಂಗದಲ್ಲಿ, ಹಾಗೂ ಕಿರಾತಾರ್ಜುನೀಯ ಪ್ರಸಂಗದಲ್ಲಿ. ಕಿರಾತವೇಷದ ಶಿವನೊಡನೆ ಸೆಣಸುವಾಗ ಅವನು ತೋರಿದ ಮಾನುಷ ಅತಿಮಾನುಷ ಶಕ್ತಿ; ಶಿವನೆಂದು ತಿಳಿದಾಗ ಅವನು ತೋರಿದ ಪರಮಪಶ್ಚಾತ್ತಾಪಜನ್ಯವಾದ, ಹೃದಯಸ್ಪರ್ಶಿಯಾದ ಶರಣಾಗತಭಕ್ತಿ; ಊರ್ವಶಿಯ ಸುಮನೋಹರ ಭಯಂಕರ ಪ್ರಣಯಾಭಿಲಾಷೆಯನ್ನು ಗೆಲ್ಲುವಲ್ಲಿ ತೋರಿದ ಮಹಾದ್ಭುತ ಜಿತೇಂದ್ರಿಯರಕ್ತಿ; ತನ್ನ ಆಬಾಲಶತ್ರುವಾದ ಕರ್ಣನನ್ನು ಭೇದಿಸುವಲ್ಲಿ ತಾನು ಪಟ್ಟ ಮಾನುಷಾತೀತವಾದ ಆದರೂ ಸಹಜವಾದ ದುರ್ಭರ ಯಾತನೆ, ಇವನ್ನು ನೋಡಿದರೆ ಸಾಕು, ಕುಮಾರವ್ಯಾಸನ ಅರ್ಜುನನ ವೈಶಿಷ್ಟ್ಯ ತಿಳಿದೀತು. ಇಂತಹವನಿಗೂ, ಸದಾ ಶ್ರೀಕೃಷ್ಣ ಸನ್ನಿಧಾನದಲ್ಲೇ ಇರುತ್ತಿದ್ದ ಇಂತಹ ಪುಣ್ಯಾತ್ಮನಿಗೂ, ಆಗಾಗ್ಗೆ ಗ್ಲಾನಿಯುಂಟಾಗುತ್ತಿತ್ತು! ಯುದ್ಧಕ್ಕೆ ಪ್ರಾರಂಭದ ಗೀತೋಪದೇಶದ ಸನ್ನಿವೇಶದಲ್ಲಿ ಮಾತ್ರವೇ ಅಲ್ಲ, ಭಗದತ್ತ ವಧಾ ಪ್ರಸಂಗದಲ್ಲಿ ತನಗೆ ನೆರವು ನೀಡಿದ ಶ್ರೀಕೃಷ್ಣನ ಮೇಲೆ ಅಸಮಾಧಾನ ಪಡುವ ಮುಹೂರ್ತ ದಲ್ಲಿ; ಕರ್ಣನ ಪರಾಕ್ರಮವನ್ನು ಅವನು ಹೊಗಳಿದಾಗ ಅದನ್ನು ಸಹಿಸದ ಘಳಿಗೆಯಲ್ಲಿ; ನೊಂದ ಧರ್ಮಜ ನಾಡಿದ ಮಾತಿಗಾಗಿ ಅವನನ್ನೇ ಕೊಲ್ಲುತ್ತೇನೆಂದು ಹೊರಟ ಅಹಂಕೋಪಾಂಧನಾದ ಸಮಯದಲ್ಲಿ, ಅರ್ಜುನ ಮಾನವದೌರ್ಬಲ್ಯದ ಭಯಂಕರತೆಯನ್ನು ಅತ್ಯಂತ ಸಹಜವಾಗಿ ಪ್ರದರ್ಶಿಸಿದ್ದಾನೆ. ಭಗವಂತ ಸಾನ್ನಿಧ್ಯ ದಲ್ಲಿದ್ದವನಿಗೂ ಇದು ಬಿಡಲಿಲ್ಲವಲ್ಲ ಎಂಬುದನ್ನು ಬಹು ಮಾರ್ಮಿಕವಾಗಿ ಅರ್ಜುನನ ಚಿತ್ರದಲ್ಲಿ ನಾರಣಪ್ಪ ಕಾಣಿಸಿದ್ದಾನೆ".

"ನಾರಣಪ್ಪನ ಭೀಮ ಅತಿ ವಿಶಿಷ್ಟನಾದ ವ್ಯಕ್ತಿ. ಶಿಶುವಾಗಿದ್ದಾಗ ತಾಯ ತೊಡೆಯಿಂದ ಕೆಳಗೆ ಬಿದ್ದುದರಿಂದ ಆ ಅಡಿಗಲ್ಲೆ ಚೂರ್ಣವಾಯಿತಂತೆ! (ಈ ಪ್ರಸಂಗ ವ್ಯಾಸರಲ್ಲೂ ಬಂದಿದೆ.) ಇಂತಹ ಶಕ್ತ ಚಿಕ್ಕಂದಿನಲ್ಲಿ ಮಾಡಿದ ತುಂಟಾಟಕ್ಕೆ ಲೆಕ್ಕವಿಲ್ಲ. ಮರವೇರಿ ಆಡುತ್ತಿದ್ದ ನೂರು ಜನ ಕೌರವರನ್ನೂ ಆ ಮರದ ಬುಡವಲುಗಿಸಿ ಹಣ್ಣುಗಳಂತೆ ಕೆಳಕ್ಕೆ ಉದುರಿಸುತ್ತಾನೆ. ಅಷ್ಟೇ ಅಲ್ಲ, ಉಳಿದವರು ಭೀಷ್ಮಾದಿಗಳಲ್ಲಿಗೆ ದೂರು ಕೊಂಡೊಯ್ದರೆ, ತನ್ನ ಮೈಯನ್ನು ತಾನೆ ಮುಳ್ಳಿನಿಂದ ಪರಚಿಕೊಂಡು ಮೊದಲು ತಾನೆ ದೂರುಹೇಳು ವಂತಹ ತುಂಟ. ಇಂತಹ ಅದಮ್ಯಶಕ್ತಿಯುಳ್ಳವನು ಮುಂದೆ ಕೌರವರ ವೈರಕ್ಕೆ ನಿತ್ಯವೂ ತುತ್ತಾಗಬಂದಾಗ ತೋರಿದ ಶಕ್ತಿ, ಸಾಮರ್ಥ್ಯ, ಅದಕ್ಕಿಂತ ಹೆಚ್ಚಾಗಿ ಅವನು ವ್ಯಕ್ತಪಡಿಸಿದ ಮಹಾಸಂಯಮ ಅದ್ಭುತವಾದುದು. ಇಷ್ಟೆಲ್ಲಾ ಶಕ್ತನಾಗಿದ್ದರೂ, ಅಧರ್ಮವನ್ನು ಕಂಡು ಸಿಡಿದೇಳುವಂತಾಗುತ್ತಿದ್ದರೂ, ಅಣ್ಣನಾಜ್ಞೆಯನ್ನು ಮಾತ್ರ ಮೀರುತ್ತಿರಲಿಲ್ಲ. ಒಮ್ಮೊಮ್ಮೆ–ಮೇರೆದಪ್ಪುತ್ತಿದ್ದ ಮಳೆಗಾಲದ ಮಹಾನದಿಯಂತೆ. ಆದರದು ಅವಿನಯದಿಂದಲ್ಲ, ಅಧರ್ಮದ ಅತಿರೇಕಕ್ಕೆ ಅವನ ಅದಮ್ಯ ಶಕ್ತಿ ಸಹಿಸಲಾರದೆ ರೋಸಿಹೋಗುತ್ತಿದ್ದುದರಿಂದ. ಕೀಚಕನ ಸನ್ನಿವೇಶದಲ್ಲಿ ಮೊದಮೊದಲು ಅಣ್ಣನಾಜ್ಞೆಗೆ ಒಳಗಾಗಿ ದ್ರೌಪದಿಗೆ ಕರಗದಿದ್ದ ಅವನ ಧರ್ಮ ನಿಷ್ಠುರ ಹೃದಯ, ಕಟ್ಟಕಡೆಯಲ್ಲಿ ಅವಳ ಕಟ್ಟೊಡೆದ ದುಃಖ ಪ್ರವಾಹದಲ್ಲಿ ಕೊಚ್ಚಿಹೋಗುತ್ತದೆ. ಆಗ ಕೋಪಿಸಿಕೊಂಡ ಭೀಮ ಬಾಯ್ದೆರೆದ ಅಗ್ನಿಪರ್ವತವಾಗುತ್ತಾನೆ. 'ಭೀಮ ಕಷ್ಟವನೆಸಗಿದನು ಹಾ! ಎಂದರಾ ದೊಡೆ ಮುಸುಡನಮರಾದ್ರಿಯಲಿ ತೇವೆನು ದೇವಸಂತತಿಯ'.........'ಹಗೆಗಳನು ಹಿಂಡಿದನು ಮನ

ದೊಳಗೆ "ನಮ್ಮಣ್ಣನಾಜ್ಞೆಯ ಗೆರೆಯ ದಾಂಟಿದೆನು'. ಹಾಗೆಯೇ ದುಶ್ಶಾಸನನ ರಕ್ತವನ್ನು ಕಂಡಿದು ಕೇಕೆ ಹಾಕುವ ಭೈರವಲೀಲೆಯಲ್ಲಿ ತೊಡಗಿದ್ದಾಗ ಒಮ್ಮೆ ಅಣ್ಣನನ್ನು, ಅರ್ಜುನನ್ನು ಅಷ್ಟೇ ಅಲ್ಲ ಶ್ರೀಕೃಷ್ಣನನ್ನೂ ಹಂಗಿಸುತ್ತಾನೆ.

ಇಂತಹ ಭೀಮ ಉದ್ದುರುಂಟನೆನ್ನುವುದು ಸುಲಭ. ಆದರದು ತಪ್ಪು. ತನ್ನ ಮಹಿಮೆಯನ್ನು ತೋರಿದ ಆಂಜನೇಯನ ಮುಂದೆ ಮಾನವಸ್ವಭಾವದ ಅಲ್ಪಬುದ್ಧಿಯನ್ನು ನಿವೇದಿಸಿಕೊಳ್ಳುತ್ತಾ ವಿನಯ ದಿಂದ ನಿಂತುಕೊಂಡಿರುವ ಮಹಾಪ್ರಾಜ್ಞ ಭೀಮನನ್ನು ಕಂಡಾಗ, ಅವನಾಡಿದ ಮಾತನ್ನು ಕೇಳಿದಾಗ ಯಾರಿ ಗಾದರೂ ಗೌರವ ಪ್ರೀತಿ ಬಾರದಿರದು.

'ನೋಡಿದನು, ನಡುಗಿದನು, ಕಂಗಳ ಕೋಡಿಯಲಿ ನೀರೊರೆಯೆ ಹರುಷದ
ರೂಢಿಯಲಿ ಜೊಮ್ಮೆದ್ದು ಮನ ಡೆಂಡಣಿಸಿ ಭೀತಿಯಲಿ
ಬಾಡು ಮೋರೆಯನೆತ್ತಿ ಕೈಗಳ ನೀಡಿ ಕಂಗಳ ಮುಚ್ಚಿ ಮರಳಿದು
ನೋಡಿ ಶಿವಶಿವಾ ಎನುತ ಬೆಚ್ಚಿದನಡಿಗಡಿಗೆ......!'

'ಸಾಕು ಸಾಕಂಜಿದೆನು; ಮನುಜರು ಕಾಕು ಬಲರು, ನಿಜಸ್ವಭಾವವ
ನೇಕೆ ಬಿಡುವೆವು, ತಿಳಿದು ತಿಳಿಯೆವು, ಕಂಡೊಡಂಜುವೆವು!
ಸಾಕು ಪೂರ್ವದ ರೂಪಿನಲೆ ನಿರ್ವ್ಯಾಕುಲನ ಮಾಡೆನಲು ಪವನಜ
ನಾ ಕಪೀಶ್ವರ ನಗುತ ಮುನ್ನಿನ ರೂಪ ಕೈಕೊಂಡ'

ಅರಗಿನರಮನೆಯ ಉರಿಯಿಂದ ತಪ್ಪಿಸಿಕೊಂಡು ತನ್ನವರನ್ನು ಕಾಡಿಗೆ ಎತ್ತಿಕೊಂಡೊಯ್ದು ಮಲಗಿಸಿ ನಿದ್ರಾಭಂಗವಾಗದಂತೆ ಅವರ ಕಾಲೊತ್ತುತ್ತ ಅವರ ಸ್ಥಿತಿಯನ್ನು ನೆನೆದುಕೊಂಡು ಬಿಕ್ಕಿಬಿಕ್ಕಿ ಅಳುವ ಭೀಮನನ್ನು ಅಲ್ಲಿ ಕಾಣಬೇಕು, ಯಾರಿಗಾದರೂ ಎದೆ ಹಿಂಡುತ್ತದೆ.

'ಔಕುವುದು ಬಲುನಿದ್ರೆ, ನಿದ್ರೆಯ ನೂಕುವನು, ಕಣ್ಣೆವೆಗಳಲಿ ನಸು
ತೂಕಡಿಕೆ ತೋರಿದೊಡೆ ಮೈಗೆದರುವನು ಕೈಯೊಡನೆ,
ಸೋಕುವುದು ಮೈಮರವೆ, ಮರವೆಯನೋಕರಿಸುವುದು ಚಿತ್ತವೃತ್ತಿ, ನಿ
ರಾಕುಲಾಂತಃಕರಣನಾದನು ಬಳಿಕ ಕಲಿಭೀಮ',

'ಅನಿಬರಿರವನು ನೋಡಿ ಪೂರ್ವವ
ನೆನೆದು ಬಿರಿದಳುತ ಘನ ಕಾ
ನನದ ಮಧ್ಯದಲೀತನಿದ್ದನು ಹಿರಿದು ಚಿಂತಿಸುತ'

ಮಹಾಭಾರತದಲ್ಲಿ ಅಳದವರೇ ಇಲ್ಲವೆನ್ನಬಹುದು– ಶ್ರೀಕೃಷ್ಣ, ಅಭಿಮನ್ಯು ಹೊರತಾಗಿ! ಆದರೆ ಉಳಿದವರು ಅಳುವುದರಿಂದ ಆಗುವ ಪರಿಣಾಮಕ್ಕೂ ಭೀಮ ತನ್ನವರಿಗಾದ ಅಪದೆಸೆಯನ್ನು ಕಂಡು ಕಾಡಿನಲ್ಲಿ ಒಬ್ಬನೆ ಅಳುವುದಕ್ಕೂ ವ್ಯತ್ಯಾಸವಿದೆ. ಕುಮಾರವ್ಯಾಸನ ಭೀಮ ಇಂತಹವನು–ಸುಮವಜ್ರಸಮ!"

"ಮಹಾಭಾರತದಲ್ಲೆಲ್ಲಾ ಅತಿಯಾಗಿ ನೊಂದವಳೆಂದರೆ ದ್ರೌಪದಿ ಎಂದೇ ಹೇಳಬೇಕು. ತನ್ನ ಸ್ಥಿತಿ ಯನ್ನು ಆಕೆಯೇ ಹೇಳುತ್ತಾಳೆ:

ಜನನವೇ ಪಾಂಚಾಲ ರಾಯನ ಮನೆ, ಮನೋವಲ್ಲಭರದಾರನೆ
ಮನುಜಗಿನುಜರು ಗಣ್ಯವೇ? ಗೀರ್ವಾಣರಿಂ ಮಿಗಿಲು,
ಎನಗೆ ಬಂದೆಡರೀ ವಿರಾಟನ ವನಿತೆಯರುಗಳ ಮುಡಿಯ ಕಟ್ಟುವ
ತನುವ ತಿಗುರುವ ಕಾಲನೊತ್ತುವ ಕೆಲಸದುತ್ಸಾಹ'

ಪಾಪ! ಕಾಲನೊತ್ತುವ ಕೆಲಸದುತ್ಸಾಹ! ಇಂತಹವಳನ್ನು ಕೇಳಬಲ್ಲವನು ಒಬ್ಬ ಭೀಮ. ಆದರೆ ಅವನ ಶಕ್ತಿಗೂ ಮಿತಿಯುಂಟು. ಅವಳ ದುಃಖಾಗ್ನಿಯನ್ನು ಆರಿಸಲು ಶ್ರೀಕೃಷ್ಣ ಕರುಣಾಮೃತವರ್ಷಕ್ಕೆ ಮಾತ್ರ ಸಾಧ್ಯ. ಶ್ರೀಕೃಷ್ಣ ಅವಳಿಗಾಗಿ ಆಕೆಯ ಪತಿಗಳು ಹಿಂಜರಿದರೆ ತಾನು 'ರಿಪುಗಳ ಸೀಳಿ ಕರುಳ ಮುಡಿಸ ದಿಹೆನೆ ನಿನ್ನ ಕಬರಿಯಲಿ?' ಎಂದು ಶಪಥ ಮಾಡುತ್ತಾನೆ. ಅದಕ್ಕೆ ತಾಯಿತಂದೆಯರ ಮೇಲಾಣೆಯಿಡಲೂ ಹಿಂಜರಿಯ. ಮಹಾಭಾರತದ ಉಳಿದ ಪಾತ್ರಗಳಿಗೆ ದೊರೆತ ಕೃಷ್ಣ ಕರುಣೆ ಒಂದಾದರೆ ಕೃಷ್ಣೆ ಪಡೆದ ಕರುಣೆಯೇ ಒಂದು.

ಕೃಷ್ಣನೇ ಹೇಳುತ್ತಾನೆ ತನ್ನ ಹೃದಯ ಅವಳಿಗಾಗಿ ಹೇಗೆ ಕರಗಿ ಕೋಡಿ ಹರಿದಿದೆ ಎಂಬುದನ್ನು

'ಕಮಲಮುಖಿ ಸುಲಿವಡೆದು ಲಕ್ಷ್ಮೀರಮಣ ಲಕ್ಷ್ಮೀರಮಣ, ಲಕ್ಷ್ಮೀ
ರಮಣಯೆಂದೊರಲಿದೊಡೆ ಸಂಜಯ ನೊಂದೆ ನಾನೆಂದ'

'ಕಾವುದೈ ಗೋವಿಂದ ಸಲಹೈ ದೇವಕೀಸುತ ಗಂಡರೈವರ
ಭಾವ ಬೆಟ್ಟಿತು, ನೀನಲೈ ದೇಸಿಗರ ದೈವವಲೈ,
ದೇವ ಕೆಟ್ಟೆನು ಕೆಟ್ಟೆನೈ ಕರುಣಾವಲಂಬನದಿಂದ ತಡೆಯೈ
ಜೀವನವನೆಂದೊರಲಿದಳು, ಹಂಗಿಗನು ತಾನೆಂದ'

ತನ್ನ ಗಂಡಂದಿರನ್ನು ಅವಹೇಳನ ಮಾಡುವುದನ್ನು ನೋಡಿದಾಗ ಈಕೆಯ ಪಾತಿವ್ರತ್ಯದಲ್ಲಿ ನಮಗೆ ಶಂಕೆ ಬರುವುದು ಸುಲಭ. ಆದರೆ ಅದರಲ್ಲಿ ಎಷ್ಟು ಸಹಜತೆ, ಅನಿವಾರ್ಯತೆ, ದುರ್ದಮ್ಯತೆ ಇದೆ ಎಂಬುದನ್ನು ಕವಿ ಬಲ್ಲ; ಕೃಷ್ಣ ಬಲ್ಲ.

ಮಹಾಭಾರತದಲ್ಲೆಲ್ಲಾ ಅಗ್ನಿಕನ್ಯೆಯಾಗಿ ಜಾಜ್ವಲ್ಯಮಾನವಾಗಿ ಥಳಥಳಿಸುವ ಈಕೆ ಎಷ್ಟು ಸೌಮ್ಯ ವಾಗಿ ಮುಗ್ಧವಾಗಿ ತೋರುತ್ತಾಳೆ, ಆ ತನ್ನ ಸ್ವಯಂವರ ಮಂಟಪದಲ್ಲಿ! ಕೃಷ್ಣನನ್ನು ಅಣ್ಣ ಧೃಷ್ಟದ್ಯುಮ್ನ ಪರಿಚಯಮಾಡಿಕೊಟ್ಟಾಗ ಮೊಟ್ಟಮೊದಲು ಅವನಲ್ಲಿ ಆಕೆ ಕಂಡು ತೋರಿದ ಭಾವವೇ ಭಾವ!

'ಎನಲು ಭಕುತಿಯ ಭಾವರಸದಲಿ ನೆನೆದು ಹೊಂಪುಳಿಯೋಗಿ ರೋಮಾಂ
ಚನದ ಮೈಯುಬ್ಬಿನಲಿ ತನು ಪುಳಕಾಂಬು ಪೂರದಲಿ,
ಮನದೊಳಗೆ ವಂದಿಸಿದಳೆನಗೀತನಲಿ ಗುರುಭಾವನೆಯ ಮತಿ ಸಂ
ಜನಿಸಿತೇನೆಂದರಿಯೆನೆಂದಳು ಕಮಲಮುಖಿ ನಗುತ!'

ಭಾರತಾಂತ್ಯದಲ್ಲಿ, ತನ್ನೈವರು ಮಕ್ಕಳನ್ನು ಕಳೆದುಕೊಂಡು ವಿಹ್ವಲಳಾಗಿದ್ದ ಈಕೆ, ತನ್ನ ಕುಮಾರರನ್ನು ಕೊಂದ ಅಶ್ವತ್ಥಾಮನನ್ನು ಕೊಲ್ಲಲೆಂದು ಮುನ್ನುಗ್ಗುವ ಅರ್ಜುನ ಭೀಮರನ್ನು ತಡೆಯುವಾಗ ಆಡುವ ಮಾತನ್ನು ನೋಡಿ:

ಬಂದಳಾ ದ್ರೌಪದಿಯಹಹ ಗುರು ನಂದನನ ಕೊಲಬಾರದಕಟೀ
ನಂದನರ ಮರಣದ ಮಹಾವ್ಯಥೆಯೀತನಳಿವಿನಲಿ
ಕೊಂದುಕೂಗದೆ ಕೃಪೆಯನಬಲಾ ವೃಂದ ಸಮಸುಖ ದುಃಖಿಗಳು ಸಾ
ರೆಂದು ಭೀಮಾರ್ಜುನರ ತೆಗೆದಳು ಬಳಿಕ ಪಾಂಚಾಲಿ!'

ಭೀಮಾರ್ಜುನರು ತಪ್ಪಿ ನಡೆಯುವಾಗಲೂ ಇವಳು ತನ್ನೆಲ್ಲ ಮಕ್ಕಳನ್ನು ಕಳೆದುಕೊಂಡೂ ತೋರಿದ ಸಂಯಮ ಎಂಥ ಘನವಾದುದು!"

"ಧರ್ಮರಾಜ ಭಾರತದ ನಾಯಕನಾಗಿದ್ದರೂ ಶ್ರೀಕೃಷ್ಣನ ಅತಿಮಾನುಷ ಶಕ್ತಿಯಲ್ಲಿ ತನ್ನ ನಾಯಕತ್ವ ವನ್ನು ನಿವೇದಿಸಿಕೊಂಡಿರುವಂತೆ ಕಾಣುತ್ತಾನೆ. 'ಧರ್ಮಕ್ಷಮೆಯು ಗರ ಹೊಡೆದಿಹುದು' ಎಂದು ದ್ರೌಪದಿ ಕೋಪಿಸುವಷ್ಟುಮಟ್ಟಿಗೆ ಅವನು ಧರ್ಮಪ್ರಜ್ಞಾವಂತ. ಭೀಮನ ಪ್ರಾಕೃತಿಕ ಶಕ್ತಿಯನ್ನಾಗಲಿ, ಅರ್ಜುನನ ಲೋಕೈಕ ವೀರವನ್ನಾಗಲಿ ಬಹಳಮಟ್ಟಿಗೆ ಪ್ರದರ್ಶಿಸದಿರುವುದರಿಂದ ಇವನು ಒಮ್ಮೊಮ್ಮೆ ಸಪ್ಪೆಯಾಗಿ ತೋರಿದರೂ ತೋರಬಹುದು".

"ಭೀಷ್ಮ ದ್ರೋಣರು ಮಹಾಭಾರತದ ವೃದ್ಧರು: ಜ್ಞಾನದಿಂದ, ವಯಸ್ಸಿನಿಂದ. ಇಂತಹವರು ಏನು ಕರ್ಮದಿಂದಲೋ ಏನೋ ತಮಗಿಂತಲೂ ಬಹು ಕಿರಿಯರಾದ ಮಕ್ಕಳ ಮಧ್ಯದಲ್ಲಿ ಸಿಲುಕಿಕೊಂಡು ಬದುಕಬೇಕಾಗುತ್ತದೆ. ಅವರು ತಮ್ಮ ಸಮೃದ್ಧ ವೃದ್ಧಜ್ಞಾನವು ನಿರ್ದೇಶಿಸಿದಂತೆ ನಡೆಯಬೇಕೆಂದರೆ ತಿಂದ ಉಪ್ಪಿಗೆ ತಪ್ಪಬಾರದೆಂಬ ಸಂಕಟ ಬರುತ್ತದೆ. ಹೀಗಾಗಿ ಮಹಾಪುರಾತನ ವಟವೃಕ್ಷಗಳಂತಿದ್ದ ಈ ಮಹಾ ಚೇತನಗಳು ಸಣ್ಣಸಣ್ಣವರ ಬಿದಿರುಗಿಚ್ಚಿಗೆ ಮೇಹುಗಾಡಾದ ಮಹಾದಾರುಣ ಸನ್ನಿವೇಶವನ್ನು ಮಹಾ ಭಾರತದಲ್ಲಿ ನೋಡುತ್ತೇವೆ. ಆತ್ಮ ಸಂಯಮಕ್ಕೆ ಹೆಸರುವಾಸಿಯಾದ ಭೀಷ್ಮರು ದ್ರೋಣರಿಗಿಂತ ಜ್ಞಾನ ವಯೋವೃದ್ಧರೆಂಬುದರಲ್ಲಿ ಸಂಶಯವಿಲ್ಲ. ಕುಮಾರವ್ಯಾಸನಲ್ಲಿ ಈ ಇಬ್ಬರೂ ಶ್ರೀಕೃಷ್ಣಭಕ್ತರಾಗಿದ್ದರೂ ಆ ಭಗವದ್ ಶಕ್ತಿಯನ್ನು ಪೂರ್ಣವಾಗಿ ಕಂಡುಂಡವರು ಭೀಷ್ಮರೆ. ಕೈದು ಹಿಡಿಯುವುದಿಲ್ಲವೆಂದ ಭಗವಂತನ ಕೈಯಲ್ಲಿ ಪ್ರಲಯ ಭಯಂಕರ ಚಕ್ರಧಾರಣಮಾಡಿಸಿ ಅವನನ್ನು ಆಡಿಸಿ ಏಳಿಸಿ ನೋಡುವ ಮಹಾಶಕ್ತರು. ಅವರು. ಶ್ರೀ ಶಂಕರನ ಪ್ರಲಯ ಭಯಂಕರ ಫಾಲನೇತ್ರದೊಡನೆ ಭಕ್ತಿಯ ಚಕ್ಕಂದವಾಡಿ ಬದುಕಬಲ್ಲವರು! ಕವಿ ಕುಮಾರವ್ಯಾಸ ಹೇಳುತ್ತಾನೆ, ಅವರು ತಾಯಿ ಜಾಹ್ನವಿಯ ಮೊಲೆವಾಲನುಂಡವರು ಎಂದು! ಇಂತಹವರ ಪಾತ್ರ ಕುಮಾರವ್ಯಾಸನಲ್ಲಿ ಒಮ್ಮೊಮ್ಮೆ ತೋಲ ತಪ್ಪುವುದುಂಟು. ಅವನ್ನು ಶಕ್ತ್ಯಾಧಿಕ್ಯದ ಸಹಜ ದೋಷ ಗಳೆಂದು ಮರೆತರೆ ಉಳಿದಂತೆ ಇವರ ಪಾತ್ರ ಗಂಭೀರ ಭೀಷ್ಮವಾಗಿದೆ.

ಈ ಮಹಾನುಭಾವ ಶರಶಯ್ಯೆಗೇರಿದಾಗ ಮಹಾಕವಿ ಒಂದು ಮಾತನ್ನು ಹೇಳುತ್ತಾನೆ: 'ಪಡುವಣ ಶೈಲ ವಿಪುಲಸ್ತಂಭ ದೀಪಿಕೆಯಂತೆ ರವಿ ಮೆರೆದ' ಎಂದು. ಮಹಾಪುರುಷನ ಮರಣವನ್ನು ಆಚರಿಸಲು ಪ್ರಕೃತಿದೇವಿ ಪಶ್ಚಿಮಾಚಲ ವಿಪುಲಸ್ತಂಭದಮೇಲೆ ರವಿದೀಪಿಕೆಯನ್ನು ಹೊತ್ತಿಸಿಡುತ್ತಾಳೆ. ಧ್ಯಾನಗೋಚರ ವಾಗುವ ದಿವ್ಯತೆಯನ್ನು ಈ ಮಾತಿನಲ್ಲಿ ಕವಿ ಕಂಡಿದ್ದಾನೆ".

"ದ್ರೋಣಾಚಾರ್ಯರು ಈ ಬೆಳಕಿನಲ್ಲಿ ಪ್ರಕಾಶಮಾನವಾಗಿ ಕಾಣದಿದ್ದರೂ ಮಹಾ ತೇಜಸ್ವಿಗಳೇ ಅಹುದು. ಕುಮಾರವ್ಯಾಸ ಈ ಮಹಾವ್ಯಕ್ತಿಯ ಅಂತ್ಯವನ್ನು ದರ್ಶನಧ್ವನಿ ದೀಪ್ತವಾಗುವಂತೆ ಚಿತ್ರಿಸಿದ್ದಾನೆ. ಪ್ರಲಯ ಭೈರವರಾಗಿ ಯುದ್ಧಮಾಡುತ್ತಿರುವಾಗ ಸಪ್ತರ್ಷಿಗಳು ಜ್ಞಾನಗೋಚರವಾಗಿ ಅವರನು

ಎಚ್ಚರಿಸುವುದು, ಅವರು ಕಣ್ಮರೆಯಾದೊಡನೆಯೇ ಅವರು ಕಂಡ ಅರಿವು ಮರೆಯಾಗಿ ಮಾಯಾವರಣ ವಶಿಯಾಗಿ ಯುದ್ಧಭಯಂಕರರಾಗುವುದು, ಮತ್ತೆ ಅರಿವು, ಅನಂತರ ಪುತ್ರವ್ಯಾಮೋಹ, ಆಮೇಲೆ ವೈರಾಗ್ಯ, ನಿರ್ಯಾಣ–ಈ ಚಿತ್ರವಷ್ಟೇ ಸಾಕು, ಭಿನ್ನಭಿನ್ನಾವಸ್ಥೆಯಲ್ಲಿ ಮಾನವಚೇತನ ಹೇಗೆ ವರ್ತಿಸುತ್ತದೆ ಎಂಬುದನ್ನು ತಿಳಿಸಲು. ಅದರ ಜೊತೆಗೆ, ಭಗವದ್‌ಶಕ್ತಿ ತನ್ನ ಕೆಲಸವನ್ನು ಮಾಡಲು ಅನುಸಂಧಾನ ಮಾಡುವ ವಿಚಿತ್ರತಮ ರಹಸ್ಯ ಮಾರ್ಗವನ್ನಲ್ಲಿ ಕಾಣುತ್ತೇವೆ. ಭೀಷ್ಮರನ್ನು ಶ್ರೀಕೃಷ್ಣ ಒಂದು ಬಗೆಯಾಗಿ ಧರ್ಮ ವಾತ್ಸಲ್ಯದಿಂದ ಗೆದ್ದರೆ ಇವರನ್ನು ಬೇರೊಂದು ಬಗೆಯಿಂದ–ಅವರೊಳಗಿನ ಪರಮಧರ್ಮ ಪ್ರಜ್ಞೆಯ ಜಾಗೃತಿಯ ಮೂಲಕ ಗೆಲ್ಲುವುದನ್ನಿಲ್ಲಿ ಕಾಣುತ್ತೇವೆ".

"ಪ್ರಸಿದ್ಧರಾದ ಖಳಚತುಷ್ಟಯದ ಪ್ರಧಾನರೆಂದರೆ ಕರ್ಣಕೌರವರು. ವ್ಯಾಸರು ಈ ವ್ಯಕ್ತಿಗಳನ್ನು ಅತಿ ದೂಷಿಸದೆ ಅತಿ ಪ್ರೀತಿಸದೆ ಚಿತ್ರಿಸಿಕೊಂಡು ಹೋಗಿದ್ದಾರೆ. ಮುಂದೆ ಬಂದ ಭಾಸ, ಪಂಪ ಹಾಗೂ ಆತನ ಪ್ರಭಾವದಲ್ಲಿ ಬೆಳೆದ ರನ್ನ ಇವರನ್ನು ಉದಾತ್ತೀಕರಿಸಿ ತೋರಿಸಿದ್ದಾರೆ. ಈ ಉದಾತ್ತೀಕರಣ ಮೂಲಾಂಶವನ್ನು ಮರೆಮಾಚುವಷ್ಟುಗಬಾರದೆಂಬುದನ್ನು ಅವರೇನು ಮರೆತಿಲ್ಲ. ಕುಮಾರವ್ಯಾಸ ಕಥಾ ದೃಷ್ಟಿಯಿಂದ ವ್ಯಾಸರನ್ನು ಅನುಸರಿಸಿದ್ದರೂ ತನ್ನದೇ ಆದ ಭಾಗವತ ಪ್ರಜ್ಞೆಯ ದಿವ್ಯಪ್ರಭಾವದಿಂದ ಈ ವ್ಯಕ್ತಿಗಳನ್ನು ನೋಡಿರುವ ರೀತಿ ವಿಶಿಷ್ಟವಾಗಿದೆ. 'ಸೆಣಸು ಸೇರದ ದೇವ' ನನ್ನು ಕೆಣಕಿ ಬದುಕುವ ಸಾಹಸ, ತನ್ನ ಅಹಂಕಾರಕ್ಕೆ ಬಗೆಬಗೆಯಾಗಿ ಧಕ್ಕೆತಂದ ಪಾಂಡವರಿಗೆ ಒಂದಂಗುಲ ನೆಲವನ್ನೂ ಕೊಡುವುದಿಲ್ಲವೆಂಬ—ತೊಡೆಯುಡಿದು ಬಿದ್ದಾಗಲೂ ತನ್ನ ಭೂಮಿಯನ್ನು ತನ್ನ ವೈರಿಗಳಿಗೆ ಬಿಡೆನೆಂಬ–ಛಲ ಸುಯೋಧನನದು. ಕುಮಾರವ್ಯಾಸನ ಕೌರವ ಒಮ್ಮೊಮ್ಮೆ ಅನನ್ಯ ಸಾಧಾರಣವಾಗಿಯೇ ಅಭಿನಯಿಸಿದ್ದಾನೆ. ಕರ್ಣನ ಪಾತ್ರದ ದುರಂತತೆ ಹುಟ್ಟಿನಲ್ಲೆ ಅಡಗಿರುವಂತೆ ಕೌರವರ ದುರಂತತೆ ಹುಟ್ಟಿನಲ್ಲೆ ಅಡಗಿದೆಯೆಂಬ ಅಂಶವನ್ನು ಬಹು ಮನೋಜ್ಞವಾಗಿ ಮಹಾಭಾರತವೇ ಧ್ವನಿಸಿದೆ. ತನ್ನ ಓರಗಿತ್ತಿಗೆ ಮಕ್ಕಳಾಗಿ ತನಗಿನ್ನೂ ಮಕ್ಕಳಾಗಲಿಲ್ಲವೆಂದು ತನ್ನ ಬಸಿರನ್ನು–ವ್ಯಾಸ ಮಂತ್ರೋದಕ ಪೂತವಾದ ಗರ್ಭವನ್ನು ಗಾಂಧಾರಿ ಹೊಸೆದುಕೊಳ್ಳುತ್ತಾಳೆ. ಮಾತ್ಸರ್ಯದಿಂದ, ಅಕಾಲದಲ್ಲಾದ ಗರ್ಭಸ್ರಾವದಿಂದ ಬಂದ ಮಕ್ಕಳು ಮತ್ತೆಂತಹವರಾಗುತ್ತಾರೆ, ಜ್ಞಾತಿ ಮತ್ಸರರಾಗದೆ? ಕನ್ಯತಾ ಮುಗ್ಧತೆಯಿಂದ ಅರಿಯದೆ ಕುಂತಿ ಮಾಡಿದ ತಪ್ಪಿಗಾಗಿ ಕರ್ಣನ ಬದುಕು ಉದಾರ ಧೀರ ರಮಣೀಯವಾದರೂ ದುಃಖಮಯವಾಯಿತು. ಆದರೆ ತಾಯಿಯ ಹೊಟ್ಟೆಯುರಿಯಿಂದ, ಗರ್ಭಪಾತದಿಂದ ಸಿದ್ಧಿ ಪೂರ್ವದಲ್ಲಿ ಭಗ್ನಸಿದ್ಧರಾಗಿ ಹುಟ್ಟಿದ ಕೌರವರು ಶಕ್ತರಾದರೂ ಪತಿತರಾದರು. ಮಹಾಭಾರತ ಈ ಮಹಾ ಪತನವನ್ನು ಚಿತ್ರಿಸಿದೆ.

"ಕೌರವನಿಗೆ ಪಾಂಡವರಲ್ಲಿದ್ದ ಸಹಜ ವೈರಕ್ಕೆ ಪೋಷಕವಾಗುವಂತಹ ನಾಲ್ಕಾರು ಸನ್ನಿವೇಶಗಳನ್ನು ಕುಮಾರವ್ಯಾಸ ಬಹು ಸುಂದರವಾಗಿ ಚಿತ್ರಿಸಿದ್ದಾನೆ. ಚಿಕ್ಕಂದಿನಲ್ಲಿ ಭೀಮನ ಕೋಟಲೆಯಿಂದ ಹೊತ್ತಿಕೊಂಡ ಒಳಗಿದ್ದ ವೈರ, ದ್ರೌಪದೀ ಸ್ವಯಂವರದಲ್ಲಾದ ಪರಿಭವದಿಂದ, ರಾಜಸೂಯದಲ್ಲಾದ ನೂರಾರುಬಗೆಯ ಅಹಂಭಂಗ ಮಾನಭಂಗಗಳಿಂದ, ಚಿತ್ರಸೇನ ಪ್ರಸಂಗದಲ್ಲಾದ ಆತ್ಮಹತ್ಯಾಕಾರಿಯಾದ ಭಯಂಕರ ಅಪಮಾನದಿಂದ ದುರ್ದಮ್ಯವಾದ ವಂಶನಾಶಕ ಹಾಗೂ ಆತ್ಮನಾಶಕವಾದ ದಾವಾನಲನಾಗಿ ವೃದ್ಧಿಯಾಗುವುದನ್ನು ಕವಿ ಕುಮಾರವ್ಯಾಸ ಚಿತ್ರಿಸಿದ್ದಾನೆ. (ಇಲ್ಲಿ ಕೆಲವು ಕಡೆ ಕೌರವನಿಗಾಗಿ ಮರುಕಪಡುತ್ತೇವೆ.) ಇಂತಹ ವೈರಕ್ಕೆ ಸಹಜ ಛಲ ಪುಟವಿಡುತ್ತದೆ; ಕೃಷ್ಣ ಅದಕ್ಕೆ ಹದಗೊಡುತ್ತಾನೆ. ಇದಕ್ಕೆ ಕೃಷ್ಣ ರಾಯಭಾರ ಪ್ರಸಂಗವೆ

ಸಾಕು ಸಾಕ್ಷಿ. ಕೌರವನಿಗೆ ಆಗೊಮ್ಮೆ ಕೃಷ್ಣನ ಚಾಲನ ಮಂತ್ರ ಕಂಡಿತು. ರಾಜಸಭೆಯಲ್ಲಿ ಎಲ್ಲರಿಗೂ ವಿಶ್ವ ರೂಪವನ್ನು ತೋರಿ ತನಗೆ ಮರೆಮಾಡಿದ–ಅವನೂ ಕಂಡಿದ್ದರೇನಾಗುತ್ತಿತ್ತೊ, ಹೇಳುವರಾರು?–ಶ್ರೀಕೃಷ್ಣನ ಮಾಯಾಜಾಲವನ್ನರಿತು ಹೇಳುತ್ತಾನೆ ಕೌರವ:

'ಎನ್ನ ಹೃದಯದೊಳಿರ್ದು ಮುರಿವನು ಗನ್ನದಲಿ ಸಂಧಿಯನು; ರಿಪುಗಳೊ
ಳಿನ್ನು ತನ್ನವರವರೊಳಿರ್ದಾ ಹದನನಾಡಿಸುವ;
ಭಿನ್ನನಂತಿರೆ ತೋರಿ ಭಿನ್ನಾಭಿನ್ನನೆನಿಸಿಯೆ ಮೆರೆವ, ತಿಳಿಯಲ
ಭಿನ್ನನೀ ಮುರವೈರಿ, ನಾವಿನ್ನಂಜಲೇಕೆಂದ!'

ಮತ್ತೆ ಕೇಳಿ:

ಮಣಿದು ಬದುಕುವನಲ್ಲ, ಹಗೆಯಲಿ ಸೆಣಸಿ ಬಿಡುವವನಲ್ಲ, ಬಿಟ್ಟ ಧಾ
ರುಣಿಯ ಸಿರಿಗೆಳೆಸುವನಲ್ಲಳುಕಿಲ್ಲ ಕಾಯದಲಿ!
ರಣಮಹೋತ್ಸವವೆನ್ನ ಮತ, ಕೈ ದಣಿಯೆ ಹೊಯ್ದಾಡುವೆನು ಕೃಷ್ಣನ
ಕೆಣಕಿದಲ್ಲದೆ ವಹಿಲದಲಿ ಕೈವಲ ವಿಲ್ಲೆಂದ!'

"ಇದಲ್ಲವೆ ರೀತಿ! ಕೃಷ್ಣಮಾಯೆಯನ್ನರಿತೂ ಅದನ್ನು ಎದುರಿಸುವ ಚಲ! ನಾಟಕದ ನಟನಾದವನು ತನ್ನ ಮುನ್ನಿನ ಸ್ವರೂಪವನ್ನೂ ತನ್ನ ಸೂತ್ರಧಾರಿಯನ್ನೂ ಮರೆತಂತೆ ಅಭಿನಯಿಸಬೇಕಾದರೂ ಒಮ್ಮೊಮ್ಮೆ ಅದು ಸ್ಮೃತಿಪಟಲದ ಮೇಲೆ ಹಾಯ್ದುಹೋಗುವುದುಂಟು. ತಲ್ಲೀನತೆಯಿಂದ ಅಪಾಯವಾದರೆ ಈ ಬಗೆಯ ಅತಿ ಎಚ್ಚರದಿಂದ ರಸಾಭಾಸವುಂಟಾಗಬಹುದು, ಇಲ್ಲ ರಸಭಂಗವಾದರೂ ಆಗಬಹುದು. ಇವೆರಡರ ಅಂದರೆ ಎಚ್ಚರ ಮರವೆಗಳ, ಮಧ್ಯೆಯಿದ್ದು ರಸೋತ್ಕರ್ಷಮಾಡುವ ನಟನೆ ನಟ. ಕುಮಾರವ್ಯಾಸನ ಕೌರವ ಅಂತಹವನು. ಕೃಷ್ಣನೊಡನೆ ಸೆಣಸುತ್ತಾನೆ–ರಾಜ್ಯಕ್ಕಾಗಿಯಲ್ಲ, ಕೈವಲ್ಯಕ್ಕಾಗಿ. ಹಾಗೆ ಕೈದಣಿಯಹೊಯ್ದಾಡಿ ಸೆಣಸಾಡುವುದರಲ್ಲಿಯೆ ಮಹೋತ್ಸವವುಂಟಂತೆ. ಕೌರವ ಪಾಂಡವರನ್ನು ಕೆಣಕಿ ಚಲಗಾರ, ಅಭಿಮಾನಿ, ರಾಜ್ಯಕಾಮಿ ಎನಿಸಿಕೊಂಡಂತೆಯೆ ಕೃಷ್ಣನನ್ನು ಕೆಣಕಿ ಕೈವಲ್ಯಕಾಮಿಯೆನಿಸಿಕೊಳ್ಳುತ್ತಾನೆ. ಇಂತಹವನು ಮಡಿದಾಗ ಕವಿ ಹೇಳುತ್ತಾನೆ 'ರುಧಿರದ ತಿಲಕನಾದನಲೈ ಧರಾಂಗನೆಗೆ', ಎಂದು. ಈ ಒಂದು ರೂಪಕ ಕೌರವನ ಪಾತ್ರವನ್ನೆ ತೆಕ್ಕನೆ ಮೇಲೊಯ್ಯುತ್ತದೆ".

"ಈ ಕೌರವ ಕರ್ಣರ ಪ್ರೇಮ ಮಹಾಭಾರತವನ್ನೆಲ್ಲಾ ಬಿಗಿದಪ್ಪಿತಲ್ಲ! ಏನಾದರೂ ಆ ಬಿಗಿತಕ್ಕೆ ಧಕ್ಕೆ ಬಂದಿದ್ದರೇನಾಗುತ್ತಿತ್ತು? ಅರ್ಜುನ ಕೃಷ್ಣರ ಪ್ರೇಮ ಒಂದು ಕಡೆ, ಕೌರವ ಕರ್ಣರ ಪ್ರೇಮ ಮತ್ತೊಂದು ಕಡೆ. ಯಾವುದು ಹೆಚ್ಚು, ಯಾವುದು ಶ್ರೇಷ್ಠ, ಯಾರು ಹೇಳಬಲ್ಲರು? ಕರ್ಣನ ಜೀವಿತಕ್ಕೆ ಕೌರವ ದೊರೆತದ್ದು ಒಂದು ವಿಚಿತ್ರಯೋಗ. ಆದರೆ ಕೃಷ್ಣಾರ್ಜುನರ ಸ್ನೇಹಕ್ಕೆ ಅಘಟಿತವಾದುದೇನೂ ನಡೆಯಬೇಕಾಗಿರಲಿಲ್ಲ. ಹುಟ್ಟಿನಿಂದ ಸಂಬಂಧಿಗಳು; ಹುಟ್ಟಿಗಿಂತ ಹಿಂದೆ ಹೋದರೂ ನರನಾರಾಯಣರಾಗಿ ಸಂಬಂಧಿಗಳು. ಆದರೆ ಕ್ಷತ್ರಿಯ ತಿರಸ್ಕೃತನಾದ, ಗುರುತಿರಸ್ಕೃತನಾದ ಕರ್ಣನನ್ನು ಪ್ರೀತಿಸಲು ಕೌರವನಿಗೇನು ಪ್ರಬಲ ಕಾರಣವಿತ್ತು? ಪಾಂಡವರ ದ್ವೇಷ, ಗುರುಹಿರಿಯರ ತಿರಸ್ಕಾರಗಳಿಗೆ ಪಕ್ಕಾಗಿದ್ದ ಅವನಿಗೆ ಯಾರಾದರೊಬ್ಬರು ಸತ್ವಯುತರ ಗೆಳೆತನ ಬೇಕಿತ್ತು. ಕರ್ಣನಲ್ಲಿ ಆ ಗೆಳೆತನ ಸಿಕ್ಕಿತು. ಜೊತೆಗೆ ಸನ್ನಿವೇಶ ಬೇರೆ ಹಾಗೆಯೆ ಕೂಡಿಬಂತು. ಶಸ್ತ್ರ

ಪ್ರದರ್ಶನಕ್ಕೆ ಯೋಗ್ಯನಲ್ಲವೆಂದು ಗುರುವೆ ಮೊದಲಾದವರೆಲ್ಲ ಧಿಕ್ಕಾರಮಾಡಿದಾಗ, ಬಹಿರಂಗವಾಗಿ, ನಿಷ್ಕಾರಣವಾಗಿ ಅವಮಾನಿತನಾದ ರವಿಕುಮಾರನ ಭಾಗ್ಯಕ್ಕೆ ದೈವವಾಗಿ, ಮಾನವಾಗಿ ರಕ್ಷೆಯಾಗಿ ಬರುತ್ತಾನೆ ಕೌರವ. ಅವನ ಆ ಪ್ರೀತಿಗೆ ಪಾಂಡವರ ದ್ವೇಷವೆಷ್ಟು ಕಾರಣ, ಕರ್ಣವಿಷಯವಾದ ನಿರ್ವ್ಯಾಜ ಪ್ರೀತಿಯೆಷ್ಟು ಕಾರಣ ಎಂದು ಯೋಚಿಸಿದರೆ ಆಶ್ಚರ್ಯವಾಗಬಹುದು". "ದುರ್ಯೋಧನನ ಸ್ನೇಹ ಸ್ವಲ್ಪ ಸ್ವಾರ್ಥ ಕಲುಷಿತವಾದದ್ದು; ಕರ್ಣನದು ನಿರ್ಮಲವಾದದ್ದು, ಪ್ರಗಾಢವಾದದ್ದು, ಪ್ರಾಣಾರ್ಪಣೆಯನ್ನು ಮಾಡಿಸುವಷ್ಟು ಮಹಿಮೆಯುಳ್ಳದ್ದು. ಆ ಸ್ನೇಹ ಭಗವದ್‌ಭಕ್ತಿಗೆ ಸಮಾನವಾದದ್ದು. ತನ್ನ ಸ್ವಾಮಿ ಎಂತಾದರೂ ವರ್ತಿಸಲಿ, ಅವನು ತನ್ನ ಸ್ನೇಹಧರ್ಮವನ್ನು ಮರೆಯಲಿಲ್ಲ. ಅದೆಷ್ಟು ಬಗೆಯಾಗಿ, ತನ್ನ ಸ್ವಾಮಿಗಾಗಿ ಸ್ನೇಹಚೋದಿತನಾಗಿ ಮರುಗಿದನೊ. ಇದನ್ನು ಕುರಿತ ಅವನ ಹೃತ್‌ಸಂವಾದಗಳು ಕರುಣಾಪೂರ್ಣ ಕಲಶಗಳು. ನಾರಣಪ್ಪನ ಪ್ರತಿಭೆಯ ಗಂಗೆ ಆ ಅಕ್ಷಯ ಕಲಶವನ್ನು ಸದಾ ತುಂಬುತ್ತಿರುತ್ತದೆ. ಕರ್ಣ ಮಡಿದರೂ ಆ ಕಲಶ ಉಕ್ಕುತ್ತಿರುತ್ತದೆ".

"ಒಟ್ಟಿನಲ್ಲಿ ಕರ್ಣಸುಯೋಧನರ ಸ್ನೇಹಬಂಧನ ಮಹಾಭಾರತವೆಲ್ಲವನ್ನೂ ವ್ಯಾಪಿಸಿ ಆವರಿಸಿದೆ. ತಾನು ಪಾಂಡವನೆಂದು ತಿಳಿದ ಮೇಲೆ ಧರ್ಮಸಂಕಟಕ್ಕೆ ಒಳಗಾದ ಕರ್ಣ ಕೌರವನನ್ನು ಬಿಟ್ಟು ಅವರ ಪಕ್ಷಕ್ಕೆ ಸೇರುವುದಿರಲಿ, ತಾನು ಪಾಂಡವರ ಹಿರಿಯ ಎಂಬುದೆ ಯಾರಿಗೂ ತಿಳಿಯದ ಹಾಗೆ ವರ್ತಿಸುತ್ತಾನೆ– ಕೌರವ ಪ್ರೀತಿಗಾಗಿ. ಅವನು ಅಷ್ಟು ಮಾಡದಿದ್ದರೆ, ಇಲ್ಲವೆ ಪಾಂಡವರಿಗೆ ತನ್ನ ಜನ್ಮವೃತ್ತಾಂತ ತಿಳಿಯುವಂತೆ ಮಾಡಿದ್ದರೆ ಏನಾಗುತ್ತಿತ್ತೊ? ಯುದ್ಧ ನಿಲ್ಲುತ್ತಿತ್ತೊ? ಇರಬಹುದು. ಆದರೆ ತನ್ನ ಸ್ವಾಮಿ, ತನ್ನನ್ನು ಸಾಕಿದ ಪ್ರಿಯಮಿತ್ರ ಕೌರವಸ್ವಾಮಿ, ಛಲಕ್ಕಾಗಿ ಬದುಕಿ ಸೆಣಸಿದಲ್ಲದೆ ಮಣಿದು ಬದುಕುವುದಿಲ್ಲವೆಂದು ಪಣಗೊಂಡಿದ್ದ ಸುಯೋಧನ ಏನಾಗುತ್ತಿದ್ದ? ಹೇಳುವುದು ಕಷ್ಟ. ಎಂತಹ ಮಹಾನಿಷ್ಕೃತ್ಯಾಗ! ನಮಗೆ ತಿಳಿದಿರುವ ಕರ್ಣ ಬರಿಯ ದಾನವೀರ; ಆದರೆ ಈ ತ್ಯಾಗವೀರನನ್ನೂ ತಿಳಿಯಬೇಕು. ಅವನ ಮಹಾತ್ಯಾಗ ತನಗಾಗಿಯಲ್ಲದೆ ಕೌರವನಿಗಾಗಿ ಅಳುತ್ತದೆ; 'ಬಾಳಲರಿಯದೆ ಕೆಟ್ಟನೋ ಕೌರವನು' ಎಂದು ಅವನಿಗಾಗಿ ಮರುಗುತ್ತದೆ. ಕೌರವನೊಡನೆ ಸಂಧಾನದ ಮಾತನ್ನಾಡೆಂದು ಶ್ರೀಕೃಷ್ಣನೆ ಸೂಚಿಸಿದಾಗಲೂ ಸ್ನೇಹಬಂಧಿತನಾಗಿ, ವಿಧಿಬಂಧಿತನಾಗಿ ಕರ್ಣ ಸುಮ್ಮನಾಗುತ್ತಾನೆ.

"ಕುಮಾರವ್ಯಾಸನ ಕರ್ಣನ ಜೀವನದಲ್ಲಿ ಶ್ರೀಕೃಷ್ಣ ಪರಿಣಾಮಕಾರಿಯಾದ ಶಕ್ತಿಯಾಗಿ ವರ್ತಿಸುತ್ತಾನೆ. ಶ್ರೀಕೃಷ್ಣ ಯಾರು ಏನು ಎಂಬುದನ್ನು ಕರ್ಣ ಚೆನ್ನಾಗಿ ಬಲ್ಲ. ಆದರೂ ಸ್ನೇಹಬಂಧಿತನಾಗಿ, ವಿಧಿಚಾಲಿತನಾಗಿ ಬಾಯಿಕಟ್ಟಿಕೊಂಡವನಂತೆ ಇರುತ್ತಾನೆ. ಕುಮಾರವ್ಯಾಸ ಕರ್ಣನ ಮೇಲಾದ ಶ್ರೀಕೃಷ್ಣನ ಪ್ರಭಾವವನ್ನು ಅದ್ಭುತವಾಗಿ ಚಿತ್ರಿಸಿದ್ದಾನೆ. ಆದಿಪರ್ವದಲ್ಲಿ ಶಸ್ತ್ರಪ್ರದರ್ಶನ ಸನ್ನಿವೇಶದಲ್ಲಿ ಕರ್ಣನನ್ನು ಕಂಡ ಕುಂತಿಗೆ ತಾಯ್ತನದ ನೆನಪಾಗಿ ಅದನ್ನು ಹೇಳಬೇಕೆಂದಾಗ 'ವಿಷ್ಣುಮಾಯೆ' ಹಾಗಾಗದಂತೆ ಮಾಡುತ್ತದಂತೆ. 'ಎನ್ನ ಮಗನೆನೆ ಬಂದುದಿಲ್ಲದು, ತನ್ನ ವಶವೇ ವಿಷ್ಣುಮಾಯೆಯ ಬಿನ್ನಣವಲೇ; ಮಾತು ಬಿಗಿದುದು, ಮನವನೊಳಗಿಕ್ಕಿ ತನ್ನ ತಾನೇ ಮರುಗಿ ಮೂರ್ಛಾಪನ್ನೆಯಾದಳು ಕುಂತಿ!' (ವ್ಯಾಸರಲ್ಲಿ ಈ ಸನ್ನಿವೇಶ ಚಿತ್ರಣ ಬಂದರೂ ಅದರಲ್ಲಿ ಕೃಷ್ಣಮಾಯಾಕಲ್ಪನೆಯಿಲ್ಲ.) ಮುಂದೆಲ್ಲ ಹೀಗೆಯೆ ಕೃಷ್ಣಮಾಯೆ ಬೀಸಾಟವಾಡಿದೆ". "ಕರ್ಣನ ಬದುಕು ಆ ಕೃಷ್ಣಮಾಯೆಗೆ ವಶವರ್ತಿಯಾಗಿಯೇ ಮುಂದುವರಿಯಿತು; ಅವನ ಜನ್ಮವೂ ಆ ಮಾಯೆಯ ಪ್ರಭಾವಕ್ಕೆ ಅಧೀನ. ಅದರ ಹೊಣೆಗಾರಿಕೆಗೆ ಕುಂತಿ ನಿಮಿತ್ತಮಾತ್ರ".

"ಕರ್ಣಾವಸಾನದ ಪ್ರಸಂಗದಲ್ಲಿ ಅರ್ಜುನನಿಗಾದ ಅದಮ್ಯವಾದ ಕರ್ಣವ್ಯಾಮೋಹವನ್ನು ನಿವಾರಿಸಲು ಶ್ರೀಕೃಷ್ಣನು ಮಾಡಿದ ಸಾಹಸ, ಬೀಸಿದ ಮಾಯೆ ಎಂತಹದು!

'ಬೀಸಿದನು ನಿಜಮಾಯೆಯನು ಡೊಳ್ಳಾಸದಲಿ, ಹರಹಿದನು ತಮವನು,
ರೋಷವನು ಬಿತ್ತಿದನು ಮನದಲಿ, ನರನ ಕಲಿಮಾಡಿ!
ಐಸೆ ಬಳಿಕೇನೆನ್ನಖಿಳ ಗುಣದೋಷ ನಿನ್ನದು, ಪುಣ್ಯ ಪಾಪದ
ವಾಸಿ ನಮಗೇಕೆನುತ ಕೊಂಡನು ಧನುವನಾ ಪಾರ್ಥ'.

ವಿರಥನಾದ ಕರ್ಣ ಇನ್ನೂ ಅಪತನಾಗಿಯೆ ಉಳಿಯುತ್ತಾನೆ. ಅರ್ಜುನನ ಮಾರಣಾಸ್ತ್ರವು ತನ್ನ ಎದೆಯನ್ನು ಭೇದಿಸಿದ್ದರೂ ಅಮೃತನಾಗಿಯೆ ಉಳಿದಿದ್ದ ಕರ್ಣನ ಬಳಿಗೆ ಬ್ರಾಹ್ಮಣವೇಷಧಾರಿಯಾಗಿ ಕೃಷ್ಣ ಬಂದು ಅವನ ಪ್ರಾಣವಾಯುವಾಗಿದ್ದ ಕರ್ಣಕುಂಡಲವನ್ನೂ ಅವನೆದೆಯೊಳಗಿನ ಅಮೃತೋದಕವನ್ನೂ ಪಡೆದುಕೊಳ್ಳುತ್ತಾನೆ. ಹಾಗೆ ಕೃಷ್ಣ ತನ್ನ ಪರಮಪದವನ್ನು ಕರ್ಣನಿಗೆ ನೀಡುತ್ತಾನೆ. ಪತಿತನೆನಿಸಿಕೊಂಡವನನ್ನೂ ಭಗವಂತ ಅರೆದುನೋಡಿ ಒರೆದುನೋಡಿ, ಲೋಕಕ್ಕೆ ಅಂತಹವನ ಮಹತ್ತ್ವವನ್ನು ತೋರಿಸಿ ಕೈಹಿಡಿದು ಎತ್ತಿಕೊಳ್ಳುವ ದರ್ಶನವನ್ನಿಲ್ಲಿ ಕವಿ ಅದ್ಭುತವಾಗಿ ಕಂಡರಿಸಿದ್ದಾನೆ.

'ಪರಮ ಕರುಣಾಸಿಂಧು ಕರ್ಣಂಗಿರದೆ ನಿಜಮೂರ್ತಿಯನು ತೋರಿದ
ನುರುತರ ಪ್ರೇಮದಲಿ ಮುಕುತಿಯ ಪದವ ನೇಮಿಸಿದ;
ನರನನೆಚ್ಚರಿಸಿದನು, ಕರುಣೆಗೆ ಕರುಣದನುಸಂಧಾನ ಮಾಣದು,
ಧರೆಯೊಳಚ್ಚರಿಯೆನುತ ಬೆರಗಿನೊಳಿದ್ದುದಮರಗಣ!'

"ಇದೆ ಕೃಷ್ಣನು ಕರ್ಣನಿಗೆ ಬಯಸಿದ ಅಭ್ಯುದಯ, ಸುಖ. ಕೃಷ್ಣನ ಕರುಣೆಯ ಹಸುಳೆಗಳಾದ ಪಾಂಡವರಿಗೂ ಸುಲಭವಾಗಿ ದೊರೆಯದ ಪರಮಪದ ಅವರಿಗಿಂತ ಮುಂಚೆಯೆ ಕರ್ಣನಿಗೆ ದೊರೆಯಿತು...

ಕರ್ಣನ ಪಾತ್ರದಲ್ಲಿ ಕುಮಾರವ್ಯಾಸ ಅಧ್ಯಾತ್ಮದ ಹೊನ್ನಿನೆಳೆಯನ್ನು ಕಂಡು ಅವನ ಸೌಂದರ್ಯವನ್ನು ಮತ್ತಷ್ಟು ಉಜ್ವಲಗೊಳಿಸಿದ್ದಾನೆ. ಭಾಸ-ಪಂಪರು ಕಂಡರಿಸಿದ ವಿಗ್ರಹಕ್ಕೆ ಕುಮಾರವ್ಯಾಸ ಅಧ್ಯಾತ್ಮದ ವಜ್ರಕಿರೀಟವನ್ನು ತೊಡಿಸಿದ್ದಾನೆ. ಆದ್ದರಿಂದ ಕರ್ಣನ ಮೂರ್ತಿ ನಮ್ಮ ಜನತೆಯ ಮನೋಮಂದಿರದಲ್ಲಿ ಕುಂದದ ಪ್ರಭೆಯಿಂದ ಸಚೇತನವಾಗಿದೆ. ಅವನ ಸ್ನೇಹ ಜನದ ಮನವನ್ನು ಅತ್ಯುನ್ನತಿಯ ನೆಲೆಗೆ ಕೊಂಡೊಯ್ಯುವ ವಿಮಾನವಾಗಿದೆ!"

"ಮಹಾಭಾರತ ಸಹಸ್ರಾರು ವಯೋಧರ್ಮ ಮನೋಧರ್ಮವುಳ್ಳ ವ್ಯಕ್ತಿಗಳ ಸಂಗ್ರಾಮ ಭೂಮಿ. ಶ್ರೀಕೃಷ್ಣ, ಭೀಷ್ಮರಿಂದ ಅಭಿಮನ್ಯು, ಉತ್ತರನ ತನಕ ಭಿನ್ನಭಿನ್ನ ವಯಸ್ಸಿನ ಮನಸ್ಸಿನ ವ್ಯಕ್ತಿಗಳನ್ನಲ್ಲಿ ಕಾಣುತ್ತೇವೆ. ಮಹಾಭಾರತದಲ್ಲಿ ಮಕ್ಕಳಾಗಿ ಬರುವ ಈ ಉತ್ತರ ಅಭಿಮನ್ಯು ಕುಮಾರರಂತೂ ವಿಭಿನ್ನ ಸಂಸ್ಕಾರ ಪರಿಪಾಕವುಳ್ಳ ಚಿರಸ್ಮರಣೀಯ ವ್ಯಕ್ತಿಗಳಾಗಿದ್ದಾರೆ. ಈ ಚಿರಸ್ಮರಣೀಯರನ್ನು ಕಡೆದಿಟ್ಟು ಸ್ಫುಟಗೊಳಿಸಿದ ಬಹುಮಟ್ಟಿನ ಕೀರ್ತಿ ನಾರಣಪ್ಪನದೆ ಎಂದು ಧೈರ್ಯವಾಗಿ ಹೇಳಬಹುದು.

"ಉತ್ತರ ಕುಮಾರ, ಅಭಿಮನ್ಯು ಕುಮಾರ! ಎಂಥ ಜೋಡಿ, ಎಂಥ ಸಾದೃಶ್ಯ, ಎಂಥ ವೈದೃಶ್ಯ! ಇಬ್ಬರೂ ಬಹುಶಃ ಒಂದೇ ವಯಸ್ಸಿನವರು; ಅದಿರಲಿ, ಭಾವ ಭಾವಮೈದುನರು! ಪಾಂಡವ ವಂಶದ

ಕಂಡಿ ದಾಂಗುಡಿಯಿಟ್ಟದ್ದು ಉತ್ತರನ ತಂಗಿ ಉತ್ತರೆಯಿಂದ. ಇಂತಹ ಓರಗೆಯ ಬಂಧುಗಳಲ್ಲಿ ಎಂಥ ವೈಲಕ್ಷಣ್ಯ! ಉತ್ತರ ಎಂಬ ಹೆಸರು ಗಾದೆಯಾಗಿ ಬಿಟ್ಟಿದೆ. ಅವನು ವಾಕ್‌ಶೂರರ ಅಧಿನಾಯಕನಾಗಿದ್ದಾನೆ. ಅವನ ಹೆಸರಿರುವುದು ನಮ್ಮಲ್ಲಿ ಎಷ್ಟೋ ಜನರಿಗೆ ಸಮಾಧಾನ, ಧೈರ್ಯ! ಈ ವ್ಯಕ್ತಿ "ಮಹಾಭಾರತದ ಪೂರ್ವೋತ್ತರ ಪರ್ವಗಳ ಮೌನ ಗಭೀರ ಸಾಗರಗಳಿಗೆ ಹಾಸ್ಯದ ಸೇತುವಾಗಿದ್ದಾನೆ". ಹೆಂಗಳೆಯರ ಮುಂದೆ ವೀರಾಲಾಪ ಮಾಡಿ ವಾಕ್ ಶರಧಾರೆಯನ್ನು ಹರಿಸಿದ ವೀರ, ಯುದ್ಧ ಭೂಮಿಯಲ್ಲಿ ರಥದಿಂದ ಧುಮ್ಮಿಕ್ಕಿ ಓಡುವುದಾಗಲಿ, ಕಣ್ಣೆವೆ ಸೀದು ಹೋಯಿತೆಂದು ಕೈಗಳಲ್ಲಿ ಮುಖ ಮುಚ್ಚಿಕೊಳ್ಳುವುದಾಗಲಿ ಯಾರನ್ನು ತಾನೆ ನಗಿಸದು? ಆದರೆ ಈ ನಗೆಗೇಡಿ ಉತ್ತರನು ಕುಮಾರವ್ಯಾಸ ಚಿತ್ರಿಸಿರುವ ಉತ್ತರನ ಪೂರ್ವಾವಸ್ಥೆ ಮಾತ್ರ. ಅವನನ್ನು ಧನಂಜಯನು 'ಕಲಿಮಾಡಿ'ದ ಬಗೆಯನ್ನೂ ಅನಂತರ ಅವನು ನಡೆದುಕೊಂಡ ಅಪೂರ್ವ ವಿಧಾನವನ್ನೂ ನೋಡಿದರೆ ಕವಿ ಕಂಡ ಉತ್ತರನ ಉತ್ತರ ಜೀವನವೂ ವೇದ್ಯವಾದೀತು. ಹಾಸ್ಯ ಮತ್ತು ಗಭೀರತೆಯನ್ನು, ಹೇಡಿತನ ಕಲಿಗೊಳ್ಳುವುದನ್ನು ಕವಿ ಅವನ ಜೀವನದಲ್ಲಿ ಚಿತ್ರಿಸಿದ್ದಾನೆ."

"ಅಭಿಮನ್ಯುವಾದರೊ ನಿಜಕ್ಕೂ ಸಿಂಹದ ಮರಿಯೆ. ಹುಟ್ಟಿನಿಂದಲೆಂತೊ ಗುಣದಿಂದಲೂ ಹಾಗೆಯೆ ಮಹಾವೀರ. ತನ್ನ ವಯಸ್ಸಿಗೆ ಮಹಾದ್ಭುತವನ್ನೆ ಸಾಧಿಸಿದನೆನ್ನಬೇಕು. ಅವನಾಡಿದ 'ಮಕ್ಕಳಾಟ' ಕುರು ರಾಯರಿಗೆ 'ಮಾರಿಯಾಟ' 'ಮೃತ್ಯುವಾಟ' ಆಯಿತು. ಯುದ್ಧಕ್ಕೆ ಮೊದಲು ಅವನ ವೀರೋತ್ಸಾಹದ ಮಾತನ್ನು ಕೇಳಿ ಧರ್ಮರಾಜನೆ ಅಂಜಿದುದುಂಟು: 'ಶರನಿಧಿಯ ವಡಬಾನಳನ ದಳ್ಳುರಿಯ ಮರ್ಮವ ತಿವಿವ ತುಂಬಿಗೆ ಮರುಳುಂದಲೆಯುಂಟಾದಡದು ಭವ ಭವದ ಪುಣ್ಯವಲಾ!'ಎಂದು. ಆದರೆ ಅದಕ್ಕೆ ಅಭಿಮನ್ಯುವಿನ ಮಾತನ್ನು ಕೇಳಿ: 'ಬಿಡು, ಮರೀಚಿಯ ತೊರೆಗೆ ಹರಿಗೋಲಿಡುವರುಂಟೇ?' 'ಗಾಳಿ ಬೆಮರುವುದುಂಟೆ?' ಹಾಗೆಯೆ ಅಭಿಮನ್ಯುವಿನ ಸಾರಥಿಯೆ ಅವನ ಸಾಮರ್ಥ್ಯಕ್ಕೆ ಶಂಕಿಸುತ್ತಾನೆ. ಅದಕ್ಕವನ ಮಾತಿಷ್ಟೆ: 'ಮರುಳು ಸಾರಥಿ, ನಮ್ಮ ನಾವ್ ಪತಿಕರಿಸಿಕೊಳಲಾಗದು, ಕಣಾ! ನೀನರಿಯೆ ನಮ್ಮಂತರವ, ಸಾವಿನ್ನಾಡಿ ಫಲವೇನು?' 'ಬವರವಾದರೆ ಹರನ ನೊಸಲಿಗೆ ಬೆವರ ತಹೆ...'ಸಾಕಿನ್ನರ್ಜುನನು ಮಾಧವನು ಮುನಿದಡೆ ಗೆಲುವೆನು'. ಉತ್ತರ ಕುಮಾರನಿಗೂ ಇವನಿಗೂ ಏನಂತರ! ಅರ್ಜುನನನ್ನು ಸಾರಥಿಯಾಗಿ ಪಡೆದು ಹೊರಡುವ ಮುಂಚೆ ಅವನು ಆಡುವ ಮಾತೇನು: 'ಅರಿಯನೇ ಗಾಂಗೇಯನನು, ತಾನರಿಯದವನೇ ದ್ರೋಣ, ಕುಲದಲಿ ಕೊರತೆಯೆನಿಸುವ ಕರ್ಣನೆಂಬವನೆನಗೆ ಸಮಬಲನೆ?' 'ಬರಿಯ ಬಯಲಾಡಂಬರದಿ ತುರುವ ಹಿಡಿದೊಡೆ ತನ್ನ ಹೆಂಡಿರ ಸೆರೆಯ ತಾರದೆ ಮಾಣೆ'. ಯುದ್ಧವೇನಾದರೂ ಆದರೆ ಪ್ರಲಯಹರನ, ಫಾಲಾಕ್ಷನ, ನೊಸಲಿಗೆ ಬೆವರನ್ನು ತರುತ್ತೇನೆ ಎನ್ನುತ್ತಾನೆ ಅಭಿಮನ್ಯು. ಆದರೆ ಉತ್ತರ ಕುಮಾರ ಶತ್ರುಗಳ ಹೆಂಡಿರ ಸೆರೆ ತರುತ್ತೇನೆಂದೆನ್ನುತ್ತಾನೆ! ಎಂಥ ಅಂತರ!

"ಅನ್ಯರಿಗೆ ಅಭೇದ್ಯವಾಗಿದ್ದ ಪದ್ಮವ್ಯೂಹವನ್ನು ಏಕೈಕನಾಗಿ ಭೇದಿಸಿ ಒಳಹೊಕ್ಕ ಈ ಸಿಡಿಲಮರಿ ಬಂದ ಬಂದ ವೀರರನ್ನೆಲ್ಲ ಉತ್ತರಿಸುತ್ತಾನೆ. 'ನೀನು ಮಗು, ನಿಮ್ಮಯ್ಯ, ಭೀಮರನ್ನು ಕಳಿಸು' ಎಂದು ಅಹಂಕಾರದಿಂದ ನುಡಿದವರಿಗೆ 'ಮಗುವು ತಾನಹೆ, ತನ್ನ ಬಾಣಕೆ ಮಗುವುತನ ಬೇರಿಲ್ಲ ನೋಡು......!' 'ಕೊಚ್ಚೆ ನೀರೊಳಗಾಳುತೇಳುತ ಜಲಧಿ ಕಾಲ್ವೊಳೆಯೆಂಬ ಭಂಡರ ಮುಳಿದು ಮಾಡುವುದೇನು, ಮೊದಲಲಿ ನಮ್ಮನೀ ಗೆಲಿದು ಬಳಿಕ ಭೀಮಾರ್ಜುನರ ಬಯಸುವುದು' ಎಂದು ಹೇಳುವ ಅಭಿಮನ್ಯುವಿನ ವಾಕ್ಕಪಾಘಾತದಲ್ಲಿ ತಂದೆಗೆ ಗೌರವ ತೋರಿಸುವ ಹಾಗೂ ತನ್ನ ಗುರುತ್ವವನ್ನು ತೋರಿಸುವ ಧೀರ ವಿನಯ

ಧೋರಣೆಯನ್ನು ಕಾಣುತ್ತೇವೆ. ಕೈಗೆ ಸಿಕ್ಕಿದ ದುಶ್ಶಾಸನನ್ನು ಸೀಳಿ ಅವನ ಶಿರಿರಕ್ತದಲ್ಲಿ ತನ್ನ ತಾಯ ತುರುಬನ್ನು ನಾದಿಸುತ್ತೇನೆಂದು ಕೈದುಡುಕಿದ ಅಭಿಮನ್ಯು ತಟಕ್ಕನೆ ತನ್ನ ದೊಡ್ಡಪ್ಪನ ಶಪಥವನ್ನು ನೆನೆದು ತನ್ನ ಸಾಹಸಕ್ಕೆ ಹಿಂಜರಿದು ನಿಲ್ಲುತ್ತಾನೆ. 'ಇವನ ಕೊಂದರೆ ತಂದೆ ಮಿಗೆ ಮೆಚ್ಚುವನೊ, ಮುನಿವನೊ? ತನ್ನ ನುಡಿ ಸಂಭವಿಸ ದೇಬನೊ? ಭೀಮಸೇನನ ಭಾಷೆಗಂಜುವೆನು! ಇವನ ತಾನೇ ಕೊಲಲಿ, ನಮಗಿನ್ನಿವನ ತೊಡಕೇ ಬೇಡ, ಕದನದೊಳಿವನ ಭಂಗಿಸಿಬಿಡುವೆನೆಂದನು ತನ್ನ ಮನದೊಳಗೆ'.

ಯಾರೊಬ್ಬರೂ ಗೆಲ್ಲಲಾಗದೆ ಷಡ್ರಥರು ಅವನನ್ನು ಸುತ್ತುಗಟ್ಟಿ ಎದುರಿಸಿ ಛಿನ್ನಾಭಿನ್ನವಾಗುತ್ತಾರೆ. ಕೊನೆಗೆ ದ್ರೋಣರು ಕರ್ಣನನ್ನು 'ಒಡಂಬಡಿಸಿ' ಅಭಿಮನ್ಯುವಿನ ಚಾಪವನ್ನು ಹಿಂದಿನಿಂದ ಹೋಗಿ ಭೇದಿಸು ವಂತೆ ಮಾಡುತ್ತಾರೆ. ಅದನ್ನು ಕಂಡು ಈ ಸಿಂಹಕುಮಾರ ಮುಗುಳುನಗೆ ನಕ್ಕು ಆಡುವಮಾತನ್ನು ಕೇಳಿ: 'ಬೆರಗಡರಿ ಮುಖದಿರುಹಿ, ಹಿಂದಣೆನಿರಿದ ಕರ್ಣನ ನೋಡಿ ಮುಖದಲಿ ಕಿರುನಗೆಯ ಕೇವಣಿಸಿ ನುಡಿದನು ಬೆರಳನೊಲೆದೊಲೆದು......ಅವ ಶರಸಂಧಾನ ಲಾಘವದಾವ ಪರಿ, ಮಝ! ಪೂತು ಪಾಯಿಕು ದೇವ ಬಿಲ್ಲಾಳೆಂತು ಕಡಿದೈ ಕರ್ಣ ನೀ ಧನುವ! ಈ ವಿವೇಕವಿದಾರ ಸೇರುವೆ? ಯಾವಗಹುದಿದು ಹಿಂದೆ ಬಂದೆಸುವೀ ವಿಗಡತನ? ನಿನಗೆ ಮೆರೆವುದು ಕರ್ಣ!' ಧನುರ್ಭಂಗವಾದ ಮೇಲೆ ಕತ್ತಿ ಹಿರಿದು ಮತ್ತೂ ಭಯಂಕರನಾಗಿ ಯುದ್ಧ ಮಾಡುತ್ತ ಕತ್ತಿಯನ್ನೂ ಕೈಗಳನ್ನೂ ಕಳೆದುಕೊಂಡು, ರಥಚಕ್ರಗಳನ್ನೆ ತಿರ್ರನೆ ತಿರುಗಿಸಿ ಚಕ್ರಾಯುಧನಂತೆ ಯುದ್ಧಮಾಡಿ ಕೊನೆಗೆ ರಥ ಚಕ್ರವೂ ಇಲ್ಲದೆ ಇದ್ದಾಗ ತನ್ನ ಮೇಲ್ವಾದು ಬಂದ ದುಶ್ಶಾಸನ ಕುಮಾರನನ್ನು ಕೊಂದು ತಾನೂ ಮಡಿಯುತ್ತಾನೆ. ಕವಿಯ ಗಂಟಲು ಕಟ್ಟುತ್ತದೆ. ಒಂದೇ ಮಾತನಾಡುತ್ತಾನೆ: 'ಕಾಡು ಕಿಚ್ಚೆದ್ದಡವಿಯನು ಕುಡಿನಾಲಗೆಯೊಳಳವಡಿಸಿ ದಳ್ಳುರಿಜ್ವಾಲೆ ತಗ್ಗಿದವೋಲು, ಗಗನದ ಮುಗಿಲಮೋಹರವ ಧಾಳಿಯಲಿಯರೆಯಟ್ಟಿ ಸುಂಟುರುಗಾಳಿಯುರವಣೆ ನಿಂದವೊಲು ಸುರಪಾಲತನಯನ ತನಯನಸ್ತಮಿಸಿದನು ರಣದೊಳಗೆ!'

"ವೀರದ ಮಹಾಪೂರವಾಗಿ ಬಂದ ಈ ಕುಮಾರ ಕರುಣೆಯ ಮಹಾಸಾಗರವನ್ನೆ ಉಕ್ಕಿಸಿ ಹೋಗು ತ್ತಾನೆ. ಮುಂದೆ, ಪಾಂಡವರ ಶೋಕದಲ್ಲಿ, ಅದರಲ್ಲೂ ಸುಭದ್ರೆ ಅರ್ಜುನರ ದುರ್ಭರ ದುಃಖದಲ್ಲಿ ಈ ಕರುಣೆಯ ಕಡಲು ಕೊಬ್ಬಿ ಮೇರೆವರಿಯುತ್ತದೆ. ತನ್ನ ಮಗನನ್ನು ಮಕ್ಕಳ ಸಮೂಹದಲ್ಲಿ ಅರಸಿ ಕಾಣದ ಅರ್ಜುನನನ್ನು ಕಂಡಾಗ ಹೇಳಲಾಗದ ವೇದನೆಯುಂಟಾಗುತ್ತದೆ".

"ಕುಮಾರವ್ಯಾಸನ ದರ್ಶನದ ವಿಚಾರವಾಗಿ ಹೇಳದಿದ್ದರೆ ನಮ್ಮ ಮಾತು ಪೂರ್ಣವಾಗುವುದಿಲ್ಲ. ಮೊದಲೆ ಹೇಳಿದಂತೆ ಆತನದು ಭಗವದ್ದೃಷ್ಟಿಯಾದುದರಿಂದ ಅವನ ದರ್ಶನದಲ್ಲಿ ವಿಶ್ವರೂಪದರ್ಶನದ ಕಟಾಕ್ಷವಿದೆ". "ಕವಿವಿರಾಟ್ ಕುಮಾರವ್ಯಾಸನ ಮಹಿಮೆಗೆ ಕಾರಣ: ಅವನ ನಡುಗನ್ನಡದ ಭಾಮಿನೀಗಣದ ತರಂಗಶೈಲಿಯ ಸುಲಭಸರಳತೆ ಮಾತ್ರವಲ್ಲ; ಪ್ರವಾಹ ಪೂರ್ಣವಾದ ಪರ್ವತ ಭಾಗೀರಥಿಯ ಅದಮ್ಯ ವೇಗದ ಭೀಮಗಮನ ವಿನ್ಯಾಸದಿಂದ ಮುನ್ನುಗ್ಗುವ ಆತನ ಪ್ರತಿಭೆಯೊಂದೇ ಅಲ್ಲ; ಹೆಮ್ಮೋಡದಂತೆ ದಿಗಂತದಿಂದ ಅನಿರೀಕ್ಷಿತವಾಗಿ ಮೇಲ್ವಾಯುವ ಅವನ ಕಲ್ಪನಾಶಕ್ತಿ, ಕಾರ್ಗಾಳಿಯಂತೆ ಬೀಸಿ ಬಡಿಯುವ ಅವನ ಭಾವಾವೇಗ, ಮಿಂಚಿನ ಬಳ್ಳಿಯಂತೆ ಅಲ್ಲಲ್ಲಿ ತಳತಳಿಸುವ ಆತನ ರೂಪಕಾದಿಗಳ ರುದ್ರರಮ್ಯತೆ, ಸಿಡಿಲು ಗುಡುಗಿನ ಡಮರು ಡಿಂಡಿಮಗಳನ್ನೆ ಹಿಡಿದು ಬಡಿದು ಕುಣಿವ ನಾದತಾಂಡವನಂತಹ ಆತನ ರುಂದ್ರನೃತ್ಯಶೈಲಿ—ಇವು ಮಾತ್ರವೆ ಕಾರಣವಲ್ಲ, ಗದುಗಿನ ಭಾರತದ ಜನಪ್ರಿಯತೆಗೆ. ಕವಿವಿರಾಟ್ ಕುಮಾರ

ವ್ಯಾಸನ ಕಾವ್ಯಲಕ್ಷ್ಮಿಗೆ ಆಕೆಯ ನಾಡಿಯ ನಿತ್ಯಸ್ಪಂದನಗಳೇನೋ ನಿಜ, ಮೇಲೆ ಹೇಳಿದ ಗುಣಗಳೆಲ್ಲ. ಜೊತೆಗೆ ಬಹುಮುಖ್ಯವಾಗಿ, ಅವನ ಮಹಿಮೆಗೆ ಕಾರಣ–ಆತನ ಧರ್ಮದೃಷ್ಟಿ; ಆತನ ಭಗವದ್ ಭಕ್ತಿ. ಆತನ ಋಷಿದರ್ಶನ".

"ಶೈಲಿಯ ನುಣ್ಪು, ಧ್ವನಿಸೂಕ್ಷ್ಮತೆ, ವ್ಯವಹಾರ ಭೂಮಿಕೆಯಲ್ಲಿ ನಡೆಯುವ ನಾಗರಿಕ ವ್ಯಾಪಾರ ನಿರೂಪಣೆಯಲ್ಲಿ ಮೈದೋರುವ ನಯರುಚಿಯ ಸಂಸ್ಕೃತಿ, ಪ್ರಕೃತಿ ಪ್ರಪಂಚದ ವಿವರಪರಿಜ್ಞಾನ, ಪ್ರಕೃತಿ ಸೌಂದರ್ಯದಲ್ಲಿ ಗಾಢಮೋಹ, ಅದರ ಬಣ್ಣನೆಯಲ್ಲಿ ಅನುರಕ್ತಿ, ಅದರ ಶತಸಹಸ್ರಮುಖವಾದ ವೈವಿಧ್ಯದ ಒಂದೊಂದು ವಿವರದಲ್ಲಿಯೂ ಅಕ್ಕರೆಯಿಂದುಣ್ಮುವ ಆಸಕ್ತಿ–ಇತ್ಯಾದಿ ಕಲಾದೃಷ್ಟಿಯಿಂದ ಪಂಪನಿಗೆ ದ್ವಿತೀಯನೂ ಆಗದಿದ್ದರೂ ಭಾವತೀಕ್ಷ್ಣತೆಯಲ್ಲಿ, ರಸಾವೇಶದಲ್ಲಿ, ಪ್ರತಿಭಾಪ್ರವಾಹದ ದುರ್ದಮ್ಯ ವೇಗದಲ್ಲಿ, ಸಂಸ್ಕೃತಿಗೆ ತುಸು ದೂರವಾದರೂ ಪ್ರಕೃತಿಸಹಜವಾದ ಪಾರ್ವತಾರಣ್ಯಕ ರುಂದ್ರ ರೂಕ್ಷತಾ ಶಕ್ತಿಯಲ್ಲಿ ಸರ್ವವನ್ನೂ, ಸರ್ವರನ್ನೂ, ಸರ್ವಕಾಲದಲ್ಲಿಯೂ ಸರ್ವಭಾವದಲ್ಲಿಯೂ ಭಗವದ್‌ಭಕ್ತಿಯ ಶ್ರೀಮಂತಕಾಂತಿಯ ಕಣ್ಣಿನಿಂದಲೆ ಕಾಣುವ 'ವಿರಾಡ್‌ದರ್ಶನ'ದಲ್ಲಿ; ಲೌಕಿಕ ಆಗಮಿಕ ಐಹಿಕ ಆಮುಷ್ಮಿಕ ಎಂದು ಕವಲೊಡೆಯದೆ ಹಂಚದೆ ಅವಿಭಕ್ತವಾಗಿ ಆಕಾಶೋನ್ನತವಾಗಿ ಬ್ರಾಹ್ಮಭೂಮವಾಗಿ ಪರಮ ಪುರುಷಾರ್ಥ ಸ್ಪಂಸ್ಪರ್ಶಿಯಾಗಿ, ಬದುಕಿಗೆ ಬೆಳಕಿತ್ತು ಬಾಳನ್ನು ಹುರಿದುಂಬಿಸುವ ಆತ್ಮಶ್ರೀಯ ದಿವ್ಯಾಗ್ನಿ ಯಲ್ಲಿ ಆದಿಕವಿ ಪಂಪನಿಗೂ ಅದ್ವಿತೀಯನಾಗಿ ಆತನನ್ನೂ ದ್ವಿತೀಯನನ್ನಾಗಿ ಮಾಡುವ ಯೋಗಿ ಕವಿ ಪೂಜ್ಯ ನಾರಣಪ್ಪ".

"ಕುಮಾರವ್ಯಾಸ ಕಂಡ ಕೃಷ್ಣ ಅವನ ಆ ದರ್ಶನದ ಪ್ರತಿಮೆಯಾಗಿ ಮೂಡಿದ್ದಾನೆ. ಆತ ನರನಾಟಕದ ಸೂತ್ರಧಾರಿ; ಮಾನುಷಪಾತ್ರಗಳೆಲ್ಲವೂ ನಟವರ್ಗಮಾತ್ರ, ಹಾಹೆಮಾತ್ರ; ಆದರೂ ಆ ಸೂತ್ರಧಾರಿಯೆ 'ನರನಾಟಕವ ತಾನೇ ನಟಿಸಿ ತೋರುತ್ತಿದ್ದ; ಸೂತ್ರಧಾರಿ ಪಾತ್ರಧಾರಿಯಾದರೆ ಹೇಗೆ ವರ್ತಿಸಬೇಕೋ ಹಾಗೆ ವರ್ತಿಸುತ್ತಿದ್ದ–ಹೀಗೆಂದು ಹಿಂದೆಯೇ ಹೇಳಿದೆವು. ಖಳಪಾತ್ರಗಳೆಂದು ಭಾವಿತವಾಗಿರುವ ಕೌರವ ಕರ್ಣರು ತಮ್ಮ ಪಾತ್ರಾಭಿನಯದಲ್ಲೆ ಮೈಮರೆತಿದ್ದರೂ ತಾವು ಪಾತ್ರಮಾತ್ರರು ಎಂಬುದನ್ನು ಕಂಡಿದ್ದರು. ಕೌರವನಲ್ಲೂ ಈ ಭಾವ ಮೂಡಿದ ಪ್ರಸಂಗವನ್ನು–ಆ ವಿಶ್ವರೂಪದರ್ಶನ ಪ್ರಸಂಗವನ್ನು–ನೆನೆದುಕೊಂಡರೆ ಸಾಕು. ಕೃಷ್ಣನನ್ನು ಕಟ್ಟಲೆಂದು ಪ್ರಯತ್ನಿಸಿದ ಕೌರವ, ತನ್ನೊಳಗು ಹೊರಗುಗಳನ್ನು ಭಿನ್ನವಾಗಿ ಆಡಿಸು ತ್ತಿರುವ ಆ ಸೂತ್ರಧಾರಿಯ ಕೈಚಳಕವನ್ನು ಅರಿತುಕೊಳ್ಳುತ್ತಾನೆ. ಕವಿ ದಿವ್ಯವಾಗಿ ಹೇಳಿದ್ದಾನೆ ಅದನ್ನು. ಇದಕ್ಕಿಂತ ಬೇಕೆ ಕುಮಾರವ್ಯಾಸನ ದಿವ್ಯದರ್ಶನಕ್ಕೆ ದೃಷ್ಟಾಂತ. ನಟನು ತನ್ನ ನಿಜತ್ವವನ್ನೂ ತನ್ನನ್ನು ಚಾಲಿಸುವ ಸೂತ್ರಧಾರನನ್ನೂ ಅರಿತುಕೊಂಡೂ ಕೂಡ ತನ್ನ ಪಾತ್ರದ ಅಭಿನಯದಲ್ಲಿ ರಸಾಭಾಸವಾಗದಂತೆ ತಾದಾತ್ಮ್ಯದಿಂದ ಅಭಿನಯಿಸುವ ಈ ಅನ್ಯಾದೃಶ ರೀತಿಯನ್ನು ನೋಡಿ ಮೂಕರಾಗುತ್ತೇವೆ.

"ಇಲ್ಲಿ ಕುಮಾರವ್ಯಾಸ ಭಗವದ್‌ಪಾರಮ್ಯವನ್ನು ಹೇಳುವ ಭರದಲ್ಲಿ ಔಚಿತ್ಯವನ್ನು ಭಂಗಗೊಳಿಸಿಲ್ಲ. ಭಗವದ್ದೃಷ್ಟಿಯೆ ಪರಮವಾದರೂ ಅದು ಮಾನುಷದೃಷ್ಟಿಯನ್ನು ಎಷ್ಟರಮಟ್ಟಿಗೆ ಆಕ್ರಮಿಸಿಕೊಂಡರೆ ಸುಂದರ ಎಂಬುದನ್ನು ಕುಮಾರವ್ಯಾಸ ಬಲ್ಲ. ಮಾನುಷಶಕ್ತಿ ದೈವಶಕ್ತಿಯ ಮುಂದೆ ನಿಲ್ಲಬಾರದು, ನಿಲ್ಲಲಾರದು ಎಂಬುದನ್ನು ಕಂಡಂತೆಯೆ ಅದೇ ಮಾನುಷಶಕ್ತಿ ದೈವಶಕ್ತಿಯನ್ನು ಭಕ್ತಿಯಿಂದ ಗೆಲ್ಲಬಲ್ಲದು ಎಂಬ ದರ್ಶನವನ್ನೂ ಅವನು ಕಂಡಿದ್ದ. ಭಕ್ತಿಯ ವಿವಿಧಾವಸ್ಥೆಯನ್ನು ವಿವಿಧ ಪ್ರಕಾರಗಳನ್ನು ಕುಮಾರವ್ಯಾಸ ಚಿತ್ರಿಸಬಲ್ಲ. ಆದರೂ

ಅವನು ಕ್ಲೈಬ್ಯ ಜನ್ಯವಾದ ಭಕ್ತಿಯನ್ನು ಪ್ರತಿಪಾದಿಸಹೋಗಿಲ್ಲ. ಕುಮಾರವ್ಯಾಸನ ಭಕ್ತಿ ದೈನ್ಯಭಕ್ತಿಯಲ್ಲ, ಕ್ಲೈಬ್ಯಭಕ್ತಿಯಲ್ಲ; ವೀರಭಕ್ತಿ. ಇದನ್ನು ಭೀಷ್ಮಪರ್ವದಲ್ಲಿ, ಕೃಷ್ಣನು ಚಕ್ರವನ್ನು ಕೈಯಲ್ಲಿ ಹಿಡಿದ ಸನ್ನಿವೇಶದಲ್ಲಿ ಕಾಣಬಹುದು. ಭಗವಂತನೂ ದಾರಿತಪ್ಪಬಲ್ಲ. ಅಂತಹ ವೇಳೆ ಭಕ್ತ ತಿದ್ದಬಲ್ಲ–ಶಕ್ತನಾಗಿದ್ದರೆ! ಭೀಷ್ಮ ಅಂತಹ ಭಕ್ತ. ಕುಮಾರವ್ಯಾಸನದು ಭೀಷ್ಮಭಕ್ತಿ:

'ಹೋದುದೊಂದಪಮೃತ್ಯು, ಲೋಕಕೆ
ತೀದುದಿಲ್ಲಾಯುಷ್ಯ, ಮಹದಪ
ವಾದ ದೇವಂಗಾಗಿ ತಪ್ಪಿತು, ಮುಚ್ಚುಮರೆಯೇಕೆ?
ಕಾದುಕೊಂಡನು ಭೀಷ್ಮನೀ ಕಮ
ಲೋದರನ ಕೆರಳಿಚಿಯು ಭಕುತಿಯ
ಲಾದರಿಸಿದನು ಪುಣ್ಯವೆಂದನು ಕಮಲಭವ ನಗುತ'

"ಹೀಗೆ ಕುಮಾರವ್ಯಾಸ ತನ್ನ ಕಾವ್ಯದಲ್ಲಿ ಸರ್ವವನ್ನೂ ಭಗವದ್ದರ್ಶನದ ಸೂರ್ಯತೇಜಸ್ಸಿನಿಂದಲೆ ಕಂಡಿದ್ದಾನೆ". "ಮಹಾಭಾರತದಲ್ಲಿ ಇರುವ ಮಾನವ ಜೀವನದ ಜಟಿಲಕಥೆಯನ್ನು ಕಲಾಮಯವಾಗಿ ಚಿತ್ರಿಸುತ್ತಲೆ ಅದಕ್ಕೆ ಪ್ರೇರಕ–ತಾರಕವಾಗಿರುವ ಭಗವತ್‌ಶಕ್ತಿಯ ಲೀಲೆಯನ್ನೂ ಮಹಿಮೆಯನ್ನೂ ಬಾಯ್ತುಂಬ ಬಣ್ಣಿಸಬೇಕೆಂಬುದರಲ್ಲಿ ಆ ಸಮನ್ವಯವಿದೆ, ಕುಮಾರವ್ಯಾಸನ ವಿಶಿಷ್ಟವಾದ ಸಮ್ಯಕ್ ದರ್ಶನವಿದೆ".

"ಮಹಾಕವಿಯನ್ನು ಅನುಕರಣಮಾಡುವುದಕ್ಕೆ ಎಲ್ಲರೂ ಬಯಸುತ್ತಾರೆ. ಆದರೆ ಮಹಾಕವಿ ಅನುಕರಣೆಗೆ ಸಿಕ್ಕುವುದಿಲ್ಲ. ಅನುಕರಣಶೀಲ ಅವನನ್ನು ದಕ್ಕಿಸಿಕೊಳ್ಳಲೂ ಆರ. ಆ ದೃಷ್ಟಿಯಿಂದ ನೋಡುವುದಾದರೆ ಮಹಾಕವಿ ಪಥ ದೀರ್ಘವಾಗಿರುತ್ತದೆಂದು ಹೇಳುವುದು ಕಷ್ಟ. ಪಂಪ ಚಂಪೂಯುಗದ ನಾಯಕನಾದ. ಅವನನ್ನು ಅನುಕರಿಸಿದವರೆಷ್ಟು ಕವಿಗಳೊ. ಚಂಪೂಕಾವ್ಯಪಥ ಕೊರಕಲು ಬೀಳುವಷ್ಟು ಆ ದಾರಿಯಲ್ಲಿ ಸಾಗಾಟ ನಡೆಯಿತು. ಆ ಕೊರಕಲುದಾರಿಯನ್ನು ಬಿಟ್ಟು ಹರಿಹರ ರಾಘವಾಂಕ ಕುಮಾರವ್ಯಾಸರು ಹೊರಟರು. ಆ ರಾಜಮಾರ್ಗ ಮೋಹಕವಾಗಿ ಕಂಡಂತೆ, ಸಂಭದ್ರವಾಗಿ ಕಂಡಂತೆ, ಮುಂದೆ ಬಂದ ಕವಿಗಳಿಗೆ ಈ ಜನತಾಮಾರ್ಗ ತೋರಲಿಲ್ಲವೇನೊ. ಅಂತೂ ಈ ಕಾವ್ಯಪಥದಲ್ಲಿ ಚಂಪೂಮಾರ್ಗದಲ್ಲಾದಷ್ಟು ಗೊಂದಲವಾಗಿರಲಾರದು. ಕುಮಾರವ್ಯಾಸನನ್ನು ಅನುಕರಿಸಿದವರಿಗೆ ಲೆಕ್ಕವಿಲ್ಲ; ಆದರೆ ಅವನನ್ನು ಅನುಸರಿಸಿದವರು ಮಾತ್ರ ವಿರಲ. ಕುಮಾರವಾಲ್ಮೀಕಿ, ವಿಠಲನಾಥ, ಲಕ್ಷ್ಮೀಶ, ಕನಕದಾಸರು, ಭಾಸ್ಕರ ಅಷ್ಟೆ ಏಕೆ ಚಂಪೂಮಾರ್ಗದ ಷಡಕ್ಷರಿ ಎಲ್ಲರೂ ಅವನ ಪ್ರಭಾವಕ್ಕೆ ಒಳಗಾಗಿದ್ದಾರೆ. ಅವನನ್ನು ಅರಗಿಸಿಕೊಳ್ಳುವುದಕ್ಕೆ ಎಷ್ಟು ಕಷ್ಟ ಎನ್ನುವುದಕ್ಕೆ ಒಂದೇ ನಿದರ್ಶನವನ್ನು ಕೊಡಬಹುದು. ಕುಮಾರವ್ಯಾಸನ ಕಿರಾತಾರ್ಜುನೀಯ ಪ್ರಸಂಗದ ಕಥಾಭಾಗವನ್ನು ಪಂಕ್ತಿ ಪಂಕ್ತಿಯಾಗಿ ಷಡಕ್ಷರಿ ಅನುವಾದ ಮಾಡಿದ್ದಾನೆ. ಆದರೆ ಎಷ್ಟರಮಟ್ಟಿಗೆ ಅನುರಣನ ಮಾಡಲಾಗಿದೆ ನೋಡಿ:

'ಮಂಜು ಮುಸುಕಿದೊಡೇನು ಪರ್ವತ
ವಂಜುವದೆ? ಹಾಲಾಹಲವ ನೊಣ
ನೆಂಜಲಿಸುವುದೆ? ವಡಬಶಿಖಿ ನೆನೆಯುವುದೆ ತುಷಾರದಲಿ?

ಕಂಜನಾಳದಿ ಕಟ್ಟುವಡೆವುದೆ
ಕುಂಜರನು? ನರಶರದ ಜೋಡಿನ
ಜುಂಜುವೊಳೆಯಲಿ ಜಾಹ್ನವೀಧರ ಜಾರುವನೆ? ಯೆಂದ!'

ಇದು ಕುಮಾರವ್ಯಾಸನ ಪದ್ಯ. ಅದರ ಅನುವಾದವಿಲ್ಲಿದೆ:

'ಮಂಜಿನ ಪುಂಜಮೊತ್ತರಿಸಿ ಮುತ್ತಿ ಮುಸುಂಕೆ ಭಯಾರ್ತಿಗೊಳ್ವನೇ
ಕಂಜಸಖಂ? ಪತಂಗತತಿ ಪಾಯ್ದೊಡೆ ಬೆರ್ಚುಗುಮೇ ದವಾಗ್ನಿ ವಾ
ತಂ? ಜವದಿಂ ಪಳಂಚೆ ಗಿರಿ ಕಂಪನವಾಂಪುದೆ? ಪಾಂಡುಪುತ್ರನಾ
ತಂ ಜಡಿದೊತ್ತೆ ಜಾಱಿ ಪೆಱಸಾರ್ವನೆ ಧೀರ ಧನಂಜಯಾಂಬಕಂ?'

ಇದಕ್ಕಿಂತ ಬೇಕೆ ಬೇರೆಯ ನಿದರ್ಶನ, ಕುಮಾರವ್ಯಾಸ ಅನುವಾದಕ್ಕೆ ಸಿಕ್ಕನು ಎಂಬುದಕ್ಕೆ?"

ಗ್ರಂಥಸಂಪಾದನ : ಜನಸಾಮಾನ್ಯರನ್ನು ದೃಷ್ಟಿಯಲ್ಲಿಟ್ಟುಕೊಂಡು ನಾವು ಈ ಸಂಪುಟವನ್ನು ಸಂಪಾದಿಸಿದ್ದೇವೆ. ಅಂದರೆ ಸಂಶೋಧನೆಗೆ ಗಮನ ಇತ್ತಿಲ್ಲವೆಂದಲ್ಲ. ಎಲ್ಲೆಲ್ಲಿ ಸಾಧ್ಯವೊ, ಎಲ್ಲೆಲ್ಲಿ ಅನಿವಾರ್ಯವೊ ಅಲ್ಲಿ ನಾವು ನಾಲ್ಕಾರು ಓಲೆಯ ಪ್ರತಿಗಳನ್ನು ನೋಡಿದ್ದೇವೆ. ಆಗ ಮುಖ್ಯವಾಗಿ ನಾವಿಟ್ಟುಕೊಂಡಿರುವ ಪ್ರತಿಗಳು ಇವು:

೧. ಕ ೨೦೫ನೆಯ ಪ್ರತಿ; ಇದು ತಕ್ಕಮಟ್ಟಿಗೆ ಶುದ್ಧ, ವಿಶ್ವಾಸಾರ್ಹ.

೨. ಎ ೫೭ನೆಯ ಕಲ್ಲಚ್ಚಿನ ಪ್ರತಿ; ಇದು ೧೮೫೧ರಲ್ಲಿ ಮಂಗಳೂರಿನಲ್ಲಿ ಮುದ್ರಿತವಾದದ್ದು. ಇದು 'ಕ' ಪ್ರತಿಯನ್ನೆ ಬಹುಮಟ್ಟಿಗೆ ಅನುಸರಿಸಿದೆ. ಇದರಲ್ಲಿ ಮೊದಲ ನಾಲ್ಕು ಪರ್ವಗಳು ಮಾತ್ರ ಇವೆ.

೩. ಶ್ರೀ ಟಿ. ಎನ್. ಕೃಷ್ಣಯ್ಯಶೆಟ್ಟರ ಮುದ್ರಿತ ಪ್ರತಿ: ಸು. ೧೯೨೫. ಇದರಲ್ಲಿ ೧೮ ಪರ್ವಗಳು (ತಿಮ್ಮಣ್ಣನ ಉತ್ತರ ಭಾರತವೂ ಸೇರಿ) ಇವೆ. ಈ ಮುದ್ರಣಕ್ಕೆ ಮಂಗಳೂರಿನ ಪ್ರತಿಯನ್ನೆ ಅನುಸರಿಸಿರುವಂತೆ ಕಾಣುತ್ತದೆ. ಆದರೂ ಅದರಲ್ಲಿಲ್ಲದ ಕೆಲವು ಸಂಧಿಗಳು (ಉದಾ: ವಿರಾಟಪರ್ವದಲ್ಲಿ ಬರುವ ಜಟ್ಟಿಗಳ ಕಾಳಗದ ಪ್ರಸಂಗವನ್ನು ವರ್ಣಿಸುವ ಒಂದು ಸಂಧಿ) ಹೇಗೊ ಯಾರ ಕೈಯಿಂದಲೊ ಸೇರಿಕೊಂಡಿವೆ.

೪. ಓರಿಯಂಟಲ್ ಲೈಬ್ರರಿಯ ಹಿಂದಿನ ಪ್ರಕಟಣೆಗಳಲ್ಲಿ ಮೊದಲ ನಾಲ್ಕು ಪರ್ವಗಳು ಏತಕ್ಕೂ ಪ್ರಯೋಜನವಾಗಲಿಲ್ಲ. ಬಹಳ ತಪ್ಪುದಾರಿ ಹಿಡಿದಿವೆ. ಯುದ್ಧ ಪಂಚಕವನ್ನು ಮಾನ್ಯ ಶ್ರೀ ಬಿ. ಎಂ. ಶ್ರೀಕಂಠಯ್ಯನವರ ಪ್ರಧಾನ ಸಂಪಾದಕತ್ವದ ನೇತೃತ್ವದಲ್ಲಿ ಶ್ರೀ ಡಿ. ಎಲ್. ನರಸಿಂಹಾಚಾರ್ಯರು (ಭೀಷ್ಮಪರ್ವವನ್ನು) ಶ್ರೀ ಎನ್. ಅನಂತರಂಗಾಚಾರ್ಯರು (ಉಳಿದ ಪರ್ವಗಳನ್ನು) ಸೊಗಸಾಗಿ ಸಂಪಾದಿಸಿದ್ದಾರೆ. ಅವರು ಅಂದು ತಮಗೆ ಸಿಕ್ಕಿದ ಎಲ್ಲ ಸಾಮಗ್ರಿಗಳನ್ನೂ ನೋಡಿ, ತೂಗಿ, ಶ್ರೇಷ್ಠವಾಗಿ ಗ್ರಂಥ ಸಂಪಾದನೆ ಮಾಡಿದ್ದಾರೆ. ಉದ್ಯೋಗ ಪರ್ವವನ್ನು ಓರಿಯಂಟಲ್ ಲೈಬ್ರರಿಯ ಶ್ರೀ ಕೃಷ್ಣಜೋಯಿಸರು ಸಂಪಾದಿಸಿದ್ದಾರೆ. ಇವರೂ ಹತ್ತಾರು ಓಲೆಯ ಗ್ರಂಥಗಳನ್ನು ಆಧಾರವಾಗಿಟ್ಟುಕೊಂಡು, ಪಾಂಡಿತ್ಯ ಪೂರ್ಣವಾದ ರೀತಿಯಲ್ಲಿ ಸಂಪಾದಿಸಿ

ದ್ದಾರೆ. ನಾವು ಮೊದಲ ನಾಲ್ಕು ಪರ್ವಗಳಿಗೆ ಮೊದಲ ಮೂರು ಪ್ರತಿಗಳನ್ನು ಆಶ್ರಯಿಸಿದ್ದೇವೆ. ಕಲ್ಲಚ್ಚಿನ ಪ್ರತಿ ತಕ್ಕಮಟ್ಟಿಗೆ ಶುದ್ಧವಾಗಿದ್ದರೂ ಅದರಲ್ಲಾಗಲಿ ಮೊದಲ ಓರಿಯಂಟಲ್ ಲೈಬ್ರರಿಯ ಪ್ರತಿಗಳಲ್ಲಾಗಲಿ, ಇತರ ಸಂಗ್ರಹಗಳಲ್ಲಾಗಲಿ ಇರದ ಸುಂದರವಾದ ಪಾಠಾಂತರವನ್ನು ಕ ೨೦೭ನೆಯ ಪ್ರತಿಯಲ್ಲಿ ಕಂಡಿದ್ದೇವೆ. ಇಲ್ಲಿ ಅದಕ್ಕೆ ಒಂದೆ ನಿದರ್ಶನವನ್ನು ನೀಡಬಹುದು. ಆದಿಪರ್ವದಲ್ಲಿ ಈ ಪ್ರಸಂಗ ಬರುತ್ತದೆ. ಭೀಮ ದುರ್ಯೋಧನರ ವೈರವನ್ನು ಕಂಡು ಮಮ್ಮಲಮರುಗಿದ ಭೀಷ್ಮರು ಹೀಗೆನ್ನುತ್ತಾರೆ:

'ಮಂಗಳದ ಬೆಳದಿಂಗಳಿನ ಮಳೆ ಸುರಿದುದೆ ಮಹಾದೇವಾ' ಎಂದು. ಈ ಮಾತೇನೊ ಸೊಗಸಾಗಿರುವಂತೆ ಕಂಡರೂ ಅರ್ಥವಾಗಲಿಲ್ಲ. ಸಂಗ್ರಹವೊಂದರಲ್ಲಿ ಹೀಗಿತ್ತು

'ಮಂಗಳದ ಬೆಳುದಿಂಗಳಿಗೆ ಮಳೆ ಸುರಿದಂತೆ ಹಾಯೆಂದು' ಎಂದು. ಇಲ್ಲಿ ಅರ್ಥಸ್ಪಷ್ಟತೆ ದೊರೆಯಿತೆ ವಿನಾ ಮೂಲದ ಕವಿಯ ರೂಪಕದ ಸೌಂದರ್ಯ ಕಂಡಂತಾಗ ಲಿಲ್ಲ. ಆಗ ಆ ಓಲೆಯ ಪ್ರತಿಯಲ್ಲಿ ಕಂಡಿತು ಈ ಸುಂದರವಾದ ಪಾಠಾಂತರ:

'ಮಂಗಳದ ಬೆಳೆದಿಂಗಳಿನ ಮಳೆ ಸುರಿದುದೆ ಮಹಾದೇವಾ!' ಎಂದು. ಮಂಗಳದ ಬೆಳೆಗೆ ಇಂಗಳದ (ಕಾದ ಕೆಂಡದ) ಮಳೆ ಸುರಿಯಿತಲ್ಲಾ ಎನ್ನುವ ಸುಂದರವಾದ ರೂಪಕ ಕಂಡಿತು. ಹೀಗೆ ಕಾಣಬೇಕಾದ ಕುಮಾರವ್ಯಾಸನ ನೈಜಪ್ರತಿಭೆ ಇನ್ನೂ ಉಳಿದುಕೊಂಡಿದೆ. ಮಿತಕಾಲದಲ್ಲಿ ನಮ್ಮ ಶಕ್ತಿಗೆ ಸಾಧ್ಯವಾದಷ್ಟನ್ನು ನಾವಿಲ್ಲಿ, ಸಾಧಿಸಿದ್ದೇವೆ. ಈ ಹಾದಿಯಲ್ಲಿ ಆಗಬೇಕಾದ ಸಾಧನೆ ಅಗಾಧವಾಗಿದೆ.

ಉದ್ಯೋಗಪರ್ವಕ್ಕೆ ಪ್ರಚಲಿತ ಮುದ್ರಿತ ಪ್ರತಿಯನ್ನೂ ಓರಿಯಂಟಲ್ ಲೈಬ್ರರಿಯ ಸಂಶೋಧಿತ ಪ್ರತಿಯನ್ನೂ ಆಧಾರವಾಗಿಟ್ಟುಕೊಂಡಿದ್ದೇವೆ. ಆ ಗ್ರಂಥ ಸಂಪಾದನಕ್ಕೆ ಅವರು ಪ್ರಚಲಿತವಾದ ಪ್ರತಿಯನ್ನು ಬಿಟ್ಟುಬಿಟ್ಟಿರುವುದರಿಂದ ಹೀಗೆ ಮಾಡಬೇಕಾಯಿತು. ಉಳಿದ ಐದು ಪರ್ವಗಳಿಗಾಗಿ ಮೇಲೆ ಹೇಳಿದ ಓರಿಯಂಟಲ್ ಲೈಬ್ರರಿಯ ವಿಶುದ್ಧವಾದ ಪ್ರತಿಗಳನ್ನೆ ಆಶ್ರಯಿಸಿದ್ದೇವೆ. ಇಲ್ಲಿಯೂ ಪ್ರಚಲಿತವಾದ ಪ್ರತಿಯನ್ನು ಸಂಪಾದಕರು ಕೈ ಬಿಟ್ಟಿರುವುದರಿಂದ ನಾವು ಅದನ್ನೂ ಗಮನದಲ್ಲಿಟ್ಟುಕೊಂಡಿದ್ದೇವೆ. ಪ್ರಚಲಿತ ಪ್ರತಿಯನ್ನು ಸಂಪೂರ್ಣವಾಗಿ ತ್ಯಜಿಸುವಂತಿಲ್ಲವೆಂಬುದಕ್ಕೆ ಒಂದೇ ನಿದರ್ಶನವನ್ನು ಕೊಡುತ್ತೇವೆ.

'ಆ ಮಹಾಸ್ತ್ರದ ಹಾನಿ ರೋಷದ
ತಾಮಸಾಗ್ನಿಯ 'ನೋಡಿ' ಬಿಡಲು
ದ್ದಾಮನರ್ಜುನ ಕೊಂಡನಗ್ಗದ ಜಾತಮನ್ಯುವನು'

(ಓ.ಲೈ.ಪ್ರ.) ಕರ್ಣಪರ್ವ ಸಂಧಿ ೨೩, ಪದ್ಯ ೪೭,

ಇದಕ್ಕೆ ಪಾಠಾಂತರ: 'ನೊದೆದು' (ಚ) 'ಉರಿದು' (ತ.ದ.ಪ)
ಪ್ರಚಲಿತ ಪ್ರತಿಯಲ್ಲಿ ಹೀಗಿದೆ:

............ರೋಷದ
ತಾಮಸಾಗ್ನಿಯ'ನೂದಿ' ಬಿಡಲು
ದ್ದಾಮ..................

ಇದನ್ನೆ ನಾವು ಸ್ವೀಕರಿಸಿಕೊಂಡಿದ್ದೇವೆ. ಇಂತಹವು ಹತ್ತಾರು ಸನ್ನಿವೇಶಗಳು ಬಂದಿವೆ.

ಒಟ್ಟಿನಲ್ಲಿ ನಾವು ಸಿದ್ಧಗೊಳಿಸಿರುವುದು ಜನಪ್ರಿಯ ಪ್ರತಿ ಮಾತ್ರ. ಸಂಶೋಧಿತ ವಿಶುದ್ಧ ಪ್ರತಿ ಬರದತನಕ ಕುಮಾರವ್ಯಾಸನ ಪ್ರತಿಭೆಯ ನಿಜಸ್ವರೂಪದ ಸಂಪೂರ್ಣದರ್ಶನವಾಗುವುದಿಲ್ಲ. ಹಾಗೆ ಮಾಡಲು ಅತ್ಯಂತ ಪ್ರಾಚೀನವಾದ ಹಾಗೂ ಗದುಗಿನ ಸುತ್ತಮುತ್ತಣ ಪ್ರದೇಶದಲ್ಲಿ ದೊರೆಯಬಹುದಾದ ಪ್ರತಿಗಳನ್ನೆಲ್ಲಾ ಸಂಗ್ರಹಿಸಬೇಕು, ೧೪–೧೫ನೆ ಶತಮಾನದ ಶಾಸನಗಳನ್ನೆಲ್ಲಾ ಸಂಗ್ರಹಿಸಿ ಅಭ್ಯಸಿಸಬೇಕು. ಇದು ಒಂದೆರಡು ದಶಕದ ನಾಲ್ಕಾರು ವಿದ್ವಾಂಸರ ಕೆಲಸ.

"ಕೊನೆಯದಾಗಿ, ಈ ಪ್ರಕಾಶನ ಕುಮಾರವ್ಯಾಸನನ್ನು ಮನೆಮನೆಗೂ ಕೊಂಡೊಯ್ಯುವ ಪ್ರಯತ್ನ ಮಾಡಿದೆ. ಮತ್ತೆ ಆ ದಿನ, ಕಾವ್ಯರಸಾಸ್ವಾದನದಿಂದ ಭವದ ಭಾರವನ್ನು ಹಗುರ ಮಾಡಿಕೊಳ್ಳುವ ಆ ದಿನ, ಬೇಗ ಬರುವಂತಾದರೆ ನಾವೆಲ್ಲ ಧನ್ಯರು". "ನಮ್ಮ ಪುಣ್ಯಕ್ಕೆ ನಮಗೊಂದು ವಿಶೇಷ ಸೌಕರ್ಯವಿದೆ. ಅಕ್ಷರ ಪರಿಚಯವಿಲ್ಲದವರೂ ಪುಸ್ತಕ ಕ್ರಯ ಕೊಡಲಾರದವರೂ ಗಮಕಿಗಳ ಅನುಗ್ರಹದಿಂದ ನಾರಣಪ್ಪನ ರಸಾವೇಶದ ರುಚಿಯನ್ನು ಮನದಣಿಯ ಸವಿಯಬಹುದು. ಗದುಗಿನ ಭಾರತವನ್ನು ಕುರಿತು ಮಾತನಾಡುವಾಗ ಅದರ ಅಮೃತಸುಖದ ವಿತರಣೆಗೆ ದಿನ ದಿನವೂ ದುಡಿಯುತ್ತಿರುವ ಗಮಕಿಗಳನ್ನು ನೆನೆಯದಿರುವುದು ಸಾಧ್ಯವಲ್ಲ. ನಾರಣಪ್ಪನ ಕಾವ್ಯದ ಬದುಕಿಗೆ ಗಮಕ ಕಲೆ ಶ್ವಾಸೋಚ್ಛ್ವಾಸದಂತೆ ಅತ್ಯಾವಶ್ಯಕ. ಓದಿ ಅಥವಾ ಓದಿಸಿ ಕೇಳಿದಲ್ಲದೆ ಕುಮಾರವ್ಯಾಸನ ವಾಣಿಯ ಮಹತ್ತು ಅರಿವಾಗುವುದಿಲ್ಲ. ಕವಿ ಪ್ರತಿಭೆಯ ಸೂಕ್ಷ್ಮ ಸೌಂದರ್ಯಗಳನ್ನು ಅರಿಯಲು ವಿಮರ್ಶನ ಕಲೆ ಎಷ್ಟರಮಟ್ಟಿಗೆ ಆವಶ್ಯಕವೋ ಆ ಪ್ರತಿಭೆಯನ್ನು ಆಸ್ವಾದಿಸಲು ಗಮಕ ಕಲೆ ಅಷ್ಟೇಮಟ್ಟಿಗೆ ಆವಶ್ಯಕ. ವಿಮರ್ಶಕರು ಗಮಕಿಗಳಾಗಿ, ಗಮಕಿಗಳು ವಿಮರ್ಶಕರಾಗಿ ಅಥವಾ ವಿಮರ್ಶಕರಿಂದ ಗಮಕಿಗಳರಿತು, ಗಮಕಿಗಳಿಂದ ವಿಮರ್ಶಕರನುಭವಿಸಿ, ಒಬ್ಬರಿಗೊಬ್ಬರು ನೆರವಾಗಿ ಎರಡೂ ಕಲೆಗಳ ಉಪಾಸಕರು ಅನ್ಯೋನ್ಯತೆಯಿಂದ ಕುಮಾರವ್ಯಾಸನ ಸೇವೆಗೆ ಹೊರಟರೆ ಎಂತಹ ಆಶೀರ್ವಾದವಾದೀತು! ಜನಜೀವನಕ್ಕೆ ಅಂತಹ ಪುಣ್ಯಕಾಲ ಈಗಾಗಲೆ ಸ್ವಲ್ಪಮಟ್ಟಿಗೆ ಪ್ರಾರಂಭವಾಗಿದೆ. ಇಂದಿನ ಈ ಪ್ರಕಾಶನವೇ ಮಹೋತ್ಸವವಾಗಿ ಅದಕ್ಕೊಂದು ಸಾಕ್ಷಿಯಾಗಿದೆ".

"ನಮ್ಮ ಕನ್ನಡನಾಡಿಗೆ ದೇವರು ಸಹ್ಯಾದ್ರಿಯನ್ನು ದಯಪಾಲಿಸಿದ್ದಾನೆ. ತುಂಗಾ ಕಾವೇರಿಯರನ್ನು ದಯಪಾಲಿಸಿದ್ದಾನೆ. ಪಶ್ಚಿಮ ಸಮುದ್ರದ ಸಂಗ ಸಾನ್ನಿಧ್ಯಗಳನ್ನು ಕೃಪೆಮಾಡಿದ್ದಾನೆ. ಜೊತೆಗೆ, ಅವೆಲ್ಲಕ್ಕೂ ಹೆಗಲೆಣೆಯಾಗಿ ನಿಂತರೂ ನಮಗೆ ಒಡನಾಡಿಗಳಾಗಿರುವಂತೆ ಪಂಪ ನಾರಣಪ್ಪರನ್ನೂ ಅನುಗ್ರಹಿಸಿದ್ದಾನೆ. ಅವರ ಬೆಲೆಯರಿತು ಬಾಳು ಅರಳಲಿ, ಆ ವಿಶ್ವಕವಿಗಳಿಬ್ಬರನ್ನೂ ನಮ್ಮವರೆಂದು ಹೇಳಿಕೊಳ್ಳುವ ನಮ್ಮ ಹೆಮ್ಮೆಯ ನೆತ್ತಿ ಮುಗಿಲಿಗೆ ತಾಗುತ್ತಿರಲಿ!"

ಇದು ಸಮಷ್ಟಿರೂಪದ ಒಂದು ಸಹೃದಯ ವಿಮರ್ಶೆ; ಕನ್ನಡನಾಡಿನ ಹಿರಿಯ ಲೇಖಕ ವಿಮರ್ಶಕರ ಬರವಣಿಗೆಗಳಿಂದ ಆಯ್ದು ಕೋದ ತೋರಣನಾಂದಿಯಾಗಿದೆ ಇದು. ಈ ನಾಂದಿಯ ತೋರಣವನ್ನು ಕಟ್ಟುವುದರಲ್ಲಿ ಅಧ್ಯಾಪಕ ತರುಣ ಮಿತ್ರರು ನನಗೆ ನೆರವಾಗಿರುವುದನ್ನು ನೆನೆಯುತ್ತೇನೆ.

ಕುವೆಂಪು

ವಿಷಯ ಸೂಚಿ

ಸಂಧಿ	ವಿಷಯಂ		ಪುಟ
	ಆದಿಪರ್ವ		
೧	ಮಂಗಳಾಚರಣೆ	...	೧
೨	ಭಾರತ ಕಥಾರಂಭ	...	೩
೩	ಕರ್ಣ ಜನನ	...	೬
೪	ಕುರುಪಾಂಡವ ಜನನ	...	೮
೫	ಪಾಂಡು ವೃತ್ತಾಂತ	...	೧೩
೬	ಭೀಮ ದುರ್ಯೋಧನರ ವೈರ, ದ್ರೋಣಾಗಮನ	...	೧೫
೭	ಶಸ್ತ್ರ ಪ್ರದರ್ಶನ; ದ್ರುಪದ ಮಾನಭಂಗ; ದ್ರೌಪದಿ, ಧೃಷ್ಟದ್ಯುಮ್ನರ ಜನನ		೧೯
೮	ಅರಗಿನ ಅರಮನೆಯಲ್ಲಿ	...	೨೪
೯	ಹಿಡಿಂಬಕ ವಧೆ, ಹೈಡಿಂಬ ಜನನ	...	೩೧
೧೦	ಬಕವಧೆ	...	೩೩
೧೧	ಅಂಗಾರವರ್ಮ ವೃತ್ತಾಂತ, ಪಾಂಚಾಲ ನಗರ ಪ್ರವೇಶ	...	೩೬
೧೨	ಸ್ವಯಂವರ ಸಿದ್ಧತೆ	...	೪೦
೧೩	ಸ್ವಯಂವರ ಮಂಟಪದಲ್ಲಿ ದ್ರೌಪದಿ	...	೪೨
೧೪	ರಾಜರಾಜರನ್ನೆಲ್ಲ ಮತ್ಸ್ಯಯಂತ್ರ ಗೆದ್ದಿತು	...	೪೭
೧೫	ಬ್ರಾಹ್ಮಣವೇಷಧಾರಿ ಅರ್ಜುನ: ಯಂತ್ರ ಭೇದನ, ರಿಪುನೃಪ ಮರ್ದನ	...	೪೯
೧೬	ವ್ಯಾಸರ ಉಪದೇಶ, ದ್ರೌಪದಿ ಪಂಚಪಾಂಡವರ ವಿವಾಹ	...	೫೩
೧೭	ಮತ್ತೆ ಹಸ್ತಿನಾಪುರಕ್ಕೆ ಪಾಂಡವರ ಪ್ರವೇಶ	...	೫೮
೧೮	ರಾಜ್ಯ ವಿಭಜನೆ	...	೬೧
೧೯	ಸುಭದ್ರಾ ಪರಿಣಯಂ	...	೬೩
೨೦	ಖಾಂಡವವನ ದಹನ	...	೬೭
	ಸಭಾಪರ್ವ		
೧	ರಾಜಸೂಯಾರಂಭ	...	೭೩
೨	ಜರಾಸಂಧನ ವಧೆ	...	೮೦
೩	ಪಾರ್ಥ ದಿಗ್ವಿಜಯ	...	೮೯
೪	ಭೀಮನ ಪೂರ್ವ ದಿಗ್ವಿಜಯ	...	೯೪
೫	ಸಹದೇವನಿಂದ ದಕ್ಷಿಣ ದಿಗ್ವಿಜಯ; ಘಟೋತ್ಕಚನ ಲಂಕಾಯಾತ್ರೆ	...	೯೫
೬	ನಕುಲನ ಪಶ್ಚಿಮ ದಿಗ್ವಿಜಯ	...	೯೯

ಸಂಧಿ	ವಿಷಯ		ಪುಟ
೭	ಯಾಗಾರಂಭ	...	೧೦೧
೮	ಶಿಶುಪಾಲ ಪ್ರತಾಪ	...	೧೦೪
೯	ಭೀಷ್ಮರಿಂದ ಕೃಷ್ಣಸ್ತುತಿ	...	೧೦೮
೧೦	ಶಿಶುಪಾಲ ಛೇದನ	...	೧೧೩
೧೧	ಯಾಗ ಸಮಾಪ್ತಿ	...	೧೧೯
೧೨	ಕಾಲಪಾಶಾಕರ್ಷಣದಿಂದ ಧರ್ಮರಾಯನು ತನ್ನ ನಗರಿಯನ್ನು ಬಿಟ್ಟು ಹಸ್ತಿನಾವತಿಗೆ ನಡೆಯುತ್ತಾನೆ	...	೧೨೨
೧೩	ಕಪಟದ್ಯೂತದಲ್ಲಿ ಧರ್ಮಜನನ್ನು ಕೌರವ ಗೆಲ್ಲುತ್ತಾನೆ	...	೧೨೯
೧೪	ಪರಿಭವದಿಂದ ದ್ರೌಪದಿಯನ್ನು ಶ್ರೀಕೃಷ್ಣಸ್ಮೃತಿ ಕಾಯುತ್ತದೆ	...	೧೩೫
೧೫	ನೊಂದ ಪಾಂಡವರನ್ನು ಧೃತರಾಷ್ಟ್ರ ಸಂತೈಸಿ ಕಳಿಸುತ್ತಾನೆ	...	೧೪೪
೧೬	ಮತ್ತೆ ದ್ಯೂತ; ಮತ್ತೆ ಸೋಲು; ವನವಾಸಯಾತ್ರೆ	...	೧೪೯

ಅರಣ್ಯಪರ್ವ

೧	ವನಪ್ರವೇಶ, ಕಿಮ್ಮೀರವಧೆ	...	೧೫೬
೨	ಶ್ರೀಕೃಷ್ಣ ಸಂದರ್ಶನ	...	೧೫೯
೩	ಕಣ್ವಾಶ್ರಮದ ಜಂಬೂಫಲ	...	೧೬೧
೪	ಇಂದ್ರಕೀಲಕ್ಕೆ ಅರ್ಜುನನ ಯಾತ್ರೆ	...	೧೬೫
೫	ಶಂಭು ಕಿರಾತ ಪ್ರವೇಶ, ಮೂಕದಾನವ ದಹನ	...	೧೬೮
೬	ಧೀರಭಕ್ತ ಅರ್ಜುನನಿಗಾದ ಶಿವಕರುಣೆಯ ಲಾಭ	...	೧೭೨
೭	ಇಂದ್ರಪುರಕ್ಕೆ ಅರ್ಜುನ	...	೧೮೦
೮	ಊರ್ವಶಿಯ ಸುಮನೋಹರ ಭಯಂಕರ ಪ್ರಣಯದಿಂದ ಅರ್ಜುನ ಪಾರಾದುದು		೧೮೭
೯	ಧರ್ಮನಂದನನ ತೀರ್ಥಯಾತ್ರೆ	...	೧೯೨
೧೦	ಭೀಮ ಆಂಜನೇಯನ ದರ್ಶನ ಪಡೆಯುತ್ತಾನೆ	...	೧೯೫
೧೧	ಜಟಾಸುರ, ಮಣಿಮಾನನರನ್ನು ಭೀಮ ಕೊಂದುದು	...	೧೯೯
೧೨	ಧರ್ಮರಾಯನಿಗೆ ಅರ್ಜುನ ನಿರೂಪಿಸಿದ ನಿವಾತಕವಚರ ಯುದ್ಧವರ್ಣನೆ	...	೨೦೨
೧೩	ಸರ್ಪಬಂಧನದಿಂದ ಭೀಮಸೇನನನ್ನು ಧರ್ಮರಾಯ ಉಳಿಸುತ್ತಾನೆ	...	೨೦೭
೧೪	ಕೃಷ್ಣಾಗಮನ	...	೨೧೨
೧೫	ಮುನಿಗಳ ಉಪಕಥೆ	...	೨೧೬
೧೬	ದೂರ್ವಾಸ ವೃತ್ತಾಂತ	...	೨೧೮
೧೭	ಘೋಷಯಾತ್ರೆಯ ನೆಪ	...	೨೨೨

ಸಂಧಿ	ವಿಷಯ	ಪುಟ
೧೮	ಗಂಧರ್ವ ಕೌರವಬಲಗಳ ನಡುವೆ ಹೋರಾಟ …	೨೨೫
೧೯	ಚಿತ್ರಸೇನ ಕೌರವರನ್ನು ಕಟ್ಟಿಕೊಂಡೊಯ್ಯುತ್ತಾನೆ …	೨೨೮
೨೦	ಅರ್ಜುನನಿಂದ ಚಿತ್ರಸೇನ ಪರಾಭವ, ಕೌರವ ಸಂರಕ್ಷಣೆ …	೨೩೨
೨೧	ಪರಿಭವದಿಂದ ಬೆಂದ ಕೌರವ ಪ್ರಾಯೋಪವೇಶಕ್ಕೆ ಸಿದ್ಧನಾಗುತ್ತಾನೆ ರಾಕ್ಷಸೋಪದೇಶ …	೨೩೫
೨೨	ದ್ರೌಪದಿಯನ್ನು ಅಪಹರಿಸಬಂದ ಸೈಂಧವನಿಗಾದ ಪರಿಭವ …	೨೪೦
೨೩	ಯಕ್ಷಪ್ರಶ್ನೆ …	೨೪೪

ವಿರಾಟಪರ್ವ

೧	ವಿರಾಟನಗರ ಪ್ರವೇಶ …	೨೪೯
೨	ದ್ರೌಪದಿಯಲ್ಲಿ ಕೀಚಕ ನೆನೆದ ವಿಷಮ ಮೋಹ …	೨೫೧
೩	ಭೀಮನಿಂದ ಕೀಚಕವಧೆ …	೨೫೬
೪	ದಕ್ಷಿಣಗೋಗ್ರಹಣದಲ್ಲಿ ಭೀಮ ಸಂಶರ್ಮಕನನ್ನು ಹಿಡಿಯುತ್ತಾನೆ …	೨೬೪
೫	ಉತ್ತರಗೋಗ್ರಹಣ: ಉತ್ತರನ ಪೌರುಷ; ಅರ್ಜುನನ ಸಾರಥಿತ್ವ …	೨೬೮
೬	ಭೀತಿಗೊಂಡ ಉತ್ತರನನ್ನು ಕಲಿಮಾಡಿ ಅರ್ಜುನ ಕೌರವ ಬಲವನ್ನು ಎದುರು ಗೊಳ್ಳುತ್ತಾನೆ …	೨೭೨
೭	ಕೌರವರನ್ನು ಸದೆದು ಗೋವುಗಳನ್ನು ಬಿಡಿಸಿದುದು …	೨೭೭
೮	ಸಮ್ಮೋಹನಾಸ್ತ್ರ ಪ್ರಯೋಗ …	೨೮೧
೯	ಉತ್ತರ ಧನಂಜಯರು ಜಯಶಾಲಿಗಳಾಗಿ ನಗರಕ್ಕೆ ಹಿಂತಿರುಗಿದುದು, ವಿರಾಟನ ಪುತ್ರ ವ್ಯಾಮೋಹ, ಉತ್ತರನ ಮೌನ …	೨೮೮
೧೦	ಅಭಿಮನ್ಯು ಉತ್ತರೆಯರ ಮದುವೆಗೆ ಶ್ರೀಕೃಷ್ಣ ಬರುತ್ತಾನೆ …	೨೯೧

ಉದ್ಯೋಗಪರ್ವ

೧	ಭಕ್ತಕಂಟಬಿ ಅರ್ಜುನನ ಸಾರಥಿಯಾಗುವುದು …	೨೯೮
೨	ಶಲ್ಯನನ್ನು ಕೌರವ ಒಲಿಸಿಕೊಂಡುದು, ಸಂಜಯನ ದೌತ್ಯ …	೩೦೧
೩	ವಿದುರನೀತಿ …	೩೦೫
೪	ಸನತ್ಸುಜಾತ ನೀತಿ …	೩೧೫
೫	ಕೃಷ್ಣ ಪಾಂಡವರು ಹೇಳಿದುದನ್ನು ಸಂಜಯ ಕೌರವರಿಗೆ ನಿರೂಪಿಸುತ್ತಾನೆ …	೩೨೪
೬	ಸಂಗ್ರಾಮಕ್ಕೆ ಪಾಂಡವರ ಮನಸ್ಸನ್ನು ಕೃಷ್ಣ ಹದಗೊಳಿಸಿದುದು …	೩೨೫
೭	'ಕಾಳಗವನೇ ಬಲಿದು ಬಹೆ' ಎಂದು ದ್ರೌಪದಿಗೆ ವಚನವಿತ್ತು ಕೃಷ್ಣ ಹಸ್ತಿನಾವತಿಗೆ ನಡೆದುದು …	೩೨೮

ಸಂಧಿ	ವಿಷಯ		ಪುಟ
೮	ಕೌರವನ ಒಡ್ಡೋಲಗಕ್ಕೆ ರಾಯಭಾರಿ ಅಸುರಾರಿ ಕೃಷ್ಣ ನಡೆತರುತ್ತಾನೆ	...	೩೩೦
೯	'ಬಿಡುನೆಲನ, ಕೇಡಿಗರ ಮಾತಿಂಗೊಡಬಡದಿರು' ಎಂದು ಜರೆದ ಕೃಷ್ಣನನ್ನು ಕೌರವ ಕಟ್ಟಲು ಮಾಡುವ ಸಾಹಸ, ವಿಶ್ವರೂಪದರ್ಶನ	...	೩೩೫
೧೦	ಕರ್ಣಭೇದನ	...	೩೪೧
೧೧	ಧೃಷ್ಟದ್ಯುಮ್ನನು ಸೇನಾಧಿಪತಿಯಾಗುತ್ತಾನೆ	...	೩೪೪

ಭೀಷ್ಮಪರ್ವ

೧	ಭೀಷ್ಮರು ಕೌರವರ ಸೇನಾಧಿಪತಿಯಾದುದು	...	೩೪೮
೨	ಶತ್ರು ಸುಭಟರನ್ನು ಧರ್ಮರಾಯನು ಸಾಮದಿಂದ ಒಲಿಸಿಕೊಂಡುದು	...	೩೫೩
೩	ತನ್ನ ನಿಜವನ್ನು ತೋರಿ ಶ್ರೀಕೃಷ್ಣನು ಅರ್ಜುನನ ವಿಷಾದವನ್ನು ಕಳೆದುದು	...	೩೫೬
೪	ಯುದ್ಧಾರಂಭ	...	೩೬೩
೫	ಉಭಯಪಕ್ಷದ ಮಹಾರಥರ ಯುದ್ಧ	...	೩೭೦
೬	ಕೃಷ್ಣ ಕೋಪವನ್ನು ಕೆರಳಿಸಿ ಅದನ್ನು ಭಯಭಕ್ತಿಯಿಂದ ಗೆದ್ದ ಗಾಂಗೇಯರು ದೇವದೇವನಿಗಾಗುತ್ತಿದ್ದ ಮಹದಪವಾದವನ್ನು ನಿವಾರಿಸುತ್ತಾರೆ	...	೩೭೩
೭	ಕೃಷ್ಣನೊಡನೆ ಬಂದ ಪಾಂಡವರು ಪ್ರಾರ್ಥಿಸಲು ಭೀಷ್ಮರು ಶಸ್ತ್ರಸಂನ್ಯಾಸ ಮಾಡುವುದಾಗಿ ತಿಳಿಸಿದುದು	...	೩೭೭
೮	ಅರ್ಜುನನ ಪ್ರತಾಪವನ್ನು ಕಂಡ ದ್ರೋಣಾದಿಗಳ ಬೆರಗು	...	೩೭೯
೯	ಭೀಷ್ಮಾರ್ಜುನ ಸಂಗ್ರಾಮ	...	೩೮೪
೧೦	ಭೀಷ್ಮರ ಶರಶಯನ	...	೩೮೮

ದ್ರೋಣಪರ್ವ

೧	ದ್ರೋಣಸೇನಾಧಿಪತ್ಯ	...	೩೯೨
೨	ಧರ್ಮರಾಯನನ್ನು ಹಿಡಿದು ತರುವುದಾಗಿ ಕೌರವನಿಗೆ ದ್ರೋಣರು ಭಾಷೆ ಕೊಡುವುದು	...	೩೯೭
೩	ಸುಪ್ರತೀಕ ಭಗದತ್ತರನ್ನು ಅರ್ಜುನ ಕೊಲ್ಲುವುದು	...	೪೦೩
೪	ಪದ್ಮವ್ಯೂಹರಚನೆ; ವ್ಯೂಹಭೇದನಕ್ಕೆ ಅಭಿಮನ್ಯು ಹೊರಟದ್ದು	...	೪೦೯
೫	ಅಭಿಮನ್ಯುವಿನ ಮಕ್ಕಳಾಟಿಕೆ ಅತಿರಥರಿಗೆ ಮೃತ್ಯುವಾಟವಾಗಿ ಅವನ ಮಹಾ ಪ್ರತಾಪಕ್ಕೆ ಶತ್ರು ಕುಮಾರರು ಆಹುತಿಗೊಳ್ಳುವುದು	...	೪೧೩
೬	ಕಾಡುಕಿಚ್ಚಿನ ಉಪಶಮನ: ಅಭಿಮನ್ಯು ಮರಣ	...	೪೨೦
೭	ಧರ್ಮರಾಯನ ದುಃಖಾತಿರೇಕ, ವ್ಯಾಸರ ಉಪದೇಶ	...	೪೨೫
೮	ಅರ್ಜುನನ ಭಯಂಕರ ಶೋಕ ಕೋಪ; ಸೈಂಧವವಧ ಪ್ರತಿಜ್ಞೆ	...	೪೨೮

ಸಂಧಿ	ವಿಷಯ	ಪುಟ
೯	ಯುಕ್ತಿಯಿಂದ ದ್ರೋಣರನ್ನು ಗೆದ್ದು ಅರ್ಜುನ ಸೈನ್ಯವ್ಯೂಹವನ್ನು ಭೇದಿಸುವುದು	೪೩೩
೧೦	ಕೌರವರನ್ನು ಗೆದ್ದ ಅರ್ಜುನ ಬಳಲಿದ ತನ್ನ ಕುದುರೆಗಳಿಗೆ ಸಂಗ್ರಾಮ ಮಧ್ಯದಲ್ಲಿ ನೀರುಕುಡಿಸುವುದು ...	೪೩೭
೧೧	ಧರ್ಮರಾಜ ಕಳಿಸಿದ ಸಾತ್ಯಕಿ ಅರ್ಜುನನನ್ನು ಸೇರುವುದು ...	೪೪೧
೧೨	ಭೀಮಸೇನ ಕೌರವಾನುಜರನ್ನು ಆಹುತಿಗೊಳ್ಳುವುದು ...	೪೪೩
೧೩	ದ್ರೋಣರನ್ನು ಗೆದ್ದ ಭೀಮ ಕರ್ಣನೊಡನೆ ಸೆಣಸಿ ಘಾಸಿಯಾಗುವುದು ...	೪೪೫
೧೪	ಸೈಂಧವ ವಧೆ ...	೪೫೦
೧೫	ಘಟೋತ್ಕಚನ ರಾತ್ರಿಯುದ್ಧ ...	೪೫೪
೧೬	ಕರ್ಣನಿಂದ ಅವನ ಮರಣ ...	೪೫೯
೧೭	ರಾತ್ರಿ ಯುದ್ಧದಲ್ಲಿ ದ್ರೋಣರ ಉಗ್ರಪ್ರತಾಪ ...	೪೬೩
೧೮	ದ್ರೋಣರ ಮರಣ ...	೪೬೬
೧೯	ಅಶ್ವತ್ಥಾಮನ ಪ್ರಲಯಕೋಪ; ನಾರಾಯಣಾಸ್ತ್ರ ಪ್ರಯೋಗ; ಶ್ರೀಕೃಷ್ಣನ ಅಮೃತ ರಕ್ಷೆ ...	೪೭೨

ಕರ್ಣಪರ್ವ

೧	ಕರ್ಣನ ಸೇನಾಧಿಪತ್ಯ ...	೪೭೭
೨	ಭೀಮಸೇನನು ಕ್ಷೇಮಧೂರ್ತಿಯನ್ನು ಕೊಲ್ಲುವುದು ...	೪೭೯
೩	ಕೌರವ ಸೈನ್ಯವನ್ನು ಸಾತ್ಯಕಿ ಕಲಕುವುದು ...	೪೮೧
೪	ದುರ್ಯೋಧನನನ್ನು ಧರ್ಮರಾಯ ಗೆಲ್ಲುವುದು ...	೪೮೩
೫	ತ್ರಿಪುರದಹನದ ಕಥೆಯನ್ನು ಹೇಳಿ ಕೌರವನು ಶಲ್ಯನನ್ನು ಕರ್ಣನ ಸಾರಥಿಯಾಗಲು ಒಡಂಬಡಿಸುವುದು ...	೪೮೬
೬–೭	ತ್ರಿಪುರದಹನದ ಕಥೆ; ಕಾಮಾರಿಯು ತ್ರಿಪುರಾರಿಯಾದುದು ...	೪೮೬-೪೯೧
೮	ಸಾರಥಿಯಾದ ಶಲ್ಯನೊಡನೆ ಕರ್ಣ ಯುದ್ಧಭೂಮಿಗೆ ನಡೆತರುವುದು	೪೯೫
೯	ಶಲ್ಯ ಕರ್ಣರ ತಿಕ್ಕಾಟ ...	೪೯೮
೧೦	ಸುಷೇಣನನ್ನು ಭೀಮ ಕೊಂದುದು ...	೫೦೧
೧೧	ಧರ್ಮರಾಯನನ್ನು ಕರ್ಣ ಭಂಗಿಸುವುದು ...	೫೦೫
೧೨	ಭೀಮನಿಂದ ಕರ್ಣನ ಪರಾಭವ ...	೫೦೯
೧೩	ಭೀಮನಿಂದ ಕೌರವಾನುಜರ ಮರಣ, ಕರ್ಣನಿಂದ ಧರ್ಮಜನ ಪರಾಜಯ ...	೫೧೨
೧೪	ಅರ್ಜುನನು ಅಣ್ಣನ ಸೋಲನ್ನು ಕೇಳಿಬರುತ್ತಿರುವಾಗ ಎದುರುಗೊಂಡ ಕೌರವ ಬಲವನ್ನು ಸವೆಸುವುದು ...	೫೧೫
೧೫	ಕೌರವಸಾಗರವನ್ನು ಭೀಮಸೇನ ಕದಡುವುದು ...	೫೧೮

ಸಂಧಿ	ವಿಷಯ	ಪುಟ
೧೬	ನೊಂದ ಅಣ್ಣನನ್ನು ಕಾಣಲು ಕೃಷ್ಣನೊಡನೆ ಅರ್ಜುನ ಬರುವುದು; ಧರ್ಮಜನ ಬಿರುನುಡಿ ...	೫೨೧
೧೭	ಅವಮಾನಿತನಾದ ಅರ್ಜುನ ಅಣ್ಣನನ್ನು ಕೊಲ್ಲುತ್ತೇನೆಂದು ಮುನ್ನುಗ್ಗುವುದು; ಶ್ರೀಕೃಷ್ಣ ಕೃಪೆ; ಪಶ್ಚಾತ್ತಾಪದ ಕಣ್ಣೀರಿನಲ್ಲಿ ಸಹೋದರರ ಸಮ್ಮಿಲನ ...	೫೨೪
೧೮	ಅಣ್ಣನಾಣತಿಯನ್ನು ಪಡೆದು ಯುದ್ಧಕ್ಕೆ ಅರ್ಜುನ ಹೊರಟದ್ದು ...	೫೨೮
೧೯	ದುಶ್ಶಾಸನನ ರಕ್ತದಲ್ಲಿ ಭೀಮಸೇನನ ಕೋಪಾಗ್ನಿಗೆ ಸ್ನಾನ ...	೫೩೦
೨೦	ಜಯಮತ್ತನಾದ ಭೀಮನನ್ನು ವೃಷಸೇನನು ವಿರಥನನ್ನಾಗಿ ಮಾಡುವುದು; ಅರ್ಜುನ ಅವನನ್ನು ಕೊಲ್ಲುವುದು ...	೫೩೭
೨೧	ಕರ್ಣಾರ್ಜುನ ಯುದ್ಧಾರಂಭ ...	೫೪೧
೨೨	ಸೃಷ್ಟಿಯ ಸಮಸ್ತ ಸುರಾಸುರ ಶಕ್ತಿಗಳು ಎರಡು ಒಟ್ಟಾಗಿ ಕರ್ಣಾರ್ಜುನರ ... ಪಕ್ಷವಹಿಸುವುದು ...	೫೪೩
೨೩	ಕರ್ಣಾರ್ಜುನರ ಭಯಂಕರ ಯುದ್ಧ; ಕೃಷ್ಣ ಮೆಚ್ಚುವಂತೆ ಕರ್ಣ ಹೋರಾಡುವುದು	೫೪೬
೨೪	ಕರ್ಣನ ಪರಾಕ್ರಮಕ್ಕೆ ಆಂಜನೇಯ ತಲೆತೂಗುವುದು ...	೫೫೦
೨೫	ಸರ್ಪಬಾಣಪ್ರಯೋಗ; ಶಲ್ಯ ತಿರಸ್ಕಾರ ...	೫೫೪
೨೬	ಕರ್ಣನ ವಿಜಯಸಿರಿ ಧನಂಜಯನ ಭುಜಕ್ಕೆ ಸರಿದಳು ...	೫೫೮
೨೭	ಕರ್ಣಾವಸಾನ; ಪಾಂಡವರ ದುಮ್ಮಾನ; ಕೌರವನ ಪ್ರಲಾಪ ...	೫೬೨

ಶಲ್ಯಪರ್ವ

೧	ಶಲ್ಯ ಸೇನಾಧಿಪತ್ಯ ...	೫೬೫
೨	ಧರ್ಮರಾಯನು ಶಲ್ಯನನ್ನು ಜಯಿಸುವುದು ...	೫೬೮
೩	ಧರ್ಮರಾಯನಿಂದ ಶಲ್ಯವಧೆ ...	೫೭೨

ಗದಾಪರ್ವ

೧	ಸುಯೋಧನನು ತನ್ನನ್ನು ತಾನೆ ಸೇನಾಧಿಪತಿಯಾಗಿ ಮಾಡಿಕೊಂಡುದು ...	೫೭೯
೨	ಸಹದೇವನಿಂದ ಶಕುನಿಯ ವಧೆ; ಅರ್ಜುನನಿಂದ ಸಮಸಪ್ತಕರ ವಧೆ ...	೫೮೪
೩	ದ್ವೈಪಾಯನ ಸರೋವರ ಪ್ರವೇಶ ...	೫೮೭
೪	ಪಾಂಡವರು ಸುಯೋಧನನನ್ನು ಅರಸಿಕೊಂಡು ಅಲ್ಲಿಗೆ ಬರುವುದು	೫೯೦
೫	ಪಾಂಡವರ ಅವಹೇಳನದಿಂದ ಕೌರವ ಸರೋವರದಿಂದ ಹೊರಬರುತ್ತಾನೆ; ... ಬಲರಾಮಾಗಮನ ...	೫೯೫
೬	ಭೀಮ ದುರ್ಯೋಧನ ಸಂಗ್ರಾಮ ...	೫೯೯
೭	ಊರುಭಂಗ ...	೬೦೨
೮	ತೊಡೆಯುಡಿದ ಕೌರವನನ್ನು ಕಂಡು ದುಃಖಿಗೊಂಡ ಅಶ್ವತ್ಥಾಮ ಪಾಂಡವರನ್ನು ನಿರ್ನಾಮಗೊಳಿಸಲು ಪ್ರತಿಜ್ಞೆಮಾಡುತ್ತಾನೆ ...	೬೦೬

ಸಂಧಿ	ವಿಷಯ		ಪುಟ
೯	ರಾತ್ರಿ ಪಾಂಡವ ಶಿಬಿರದಲ್ಲಿ ಪ್ರಾಣಹತ್ಯೆ	...	೬೧೦
೧೦	ಅಶ್ವತ್ಥಾಮನ ಕುಶಿಕಾಸ್ತ್ರದಿಂದ ಉತ್ತರೆಯ ಗರ್ಭವನ್ನು ಶ್ರೀಕೃಷ್ಣ ಕಾಪಾಡುತ್ತಾನೆ; ಅಶ್ವತ್ಥಾಮನನ್ನು ಕೊಲ್ಲಲು ಮುನ್ನುಗ್ಗುವ ಭೀಮಾರ್ಜುನರನ್ನು ದ್ರೌಪದಿ ತಡೆಯುತ್ತಾಳೆ	...	೬೧೪
೧೧	ವೇದವ್ಯಾಸರು ಧೃತರಾಷ್ಟ್ರನನ್ನು ಸಂತೈಸುವುದು; ಧರ್ಮರಾಯನಿಗೆ ಗಾಂಧಾರಿಯ ಶಾಪ	...	೬೧೭
೧೨	ಮಡಿದ ಮಕ್ಕಳನ್ನು ಯುದ್ಧಭೂಮಿಯಲ್ಲಿ ಕಂಡ ಗಾಂಧಾರಿಯ ವಿಲಾಪ	...	೬೨೧
೧೩	ಧರ್ಮರಾಜ ಪಟ್ಟಾಭಿಷೇಕ	...	೬೨೩

ಕುಮಾರವ್ಯಾಸನ

ಕರ್ಣಾಟ ಭಾರತ ಕಥಾಮಂಜರಿ

ಆದಿಪರ್ವ

ಪೀಠಿಕಾ ಸಂಧಿ

ಶ್ರೀವನಿತೆಯರಸನೆ ವಿಮಲ ರಾ
ಜೀವ ಪೀಠನ ಪಿತನೆ ಜಗಕತಿ
ಪಾವನನೆ ಸನಕಾದಿ ಸಜ್ಜನನಿಕರ ದಾತಾರ
ರಾವಣಾಸುರ ಮಥನ ಶ್ರವಣ ಸು
ಧಾ ವಿನೂತನ ಕಥನ ಕಾರಣ
ಕಾವುದಾನತ ಜನವ ಗದುಗಿನ ವೀರನಾರಯಣ ೧

ಶರಣಸಂಗವ್ಯಸನ ಭುಜಗಾ
ಭರಣನಮರ ಕಿರೀಟ ಮಂಡಿತ
ಚರಣ ಚಾರುಚರಿತ್ರ ನಿರುಪಮ ಭಾಳಶಿಖಿನೇತ್ರ
ಕರಣನಿರ್ಮಲ ಭಜಕರಘು ಸಂ
ಹರಣ ದಂತಿ ಚಮೂರು ಚರ್ಮಾಂ
ಬರನೆ ಸಲಹುಗೆ ಭಕುತ ಜನರನು ಪಾರ್ವತೀರಮಣ ೨

ವರಮಣಿಗಳಿಂದೆಸೆವ ಮೌಳಿಯ
ಸರಸಿಜಾರಿಯ ಕಿರಣದೋಳಿಯ
ವಿರಚಿಸಿದ ಸಿಂಧೂರಭಾಳದಿ ಕುಣಿವ ಕುಂತಳದ
ಕರಿ ನಿಭಾಕೃತಿಯೆನಿಪ ವದನದ
ಕರದ ಪಾಶದ ಮೋದಕದ ವಿ
ಸ್ತರದ ಗಣಪತಿ ಮಾಡೆಮಗೆ ನಿರ್ವಿಘ್ನದಾಯಕವ ೩

ಗಜಮುಖನೆ ಮೆರೆವೇಕದಂತನೆ
ನಿಜಗುಣಾನ್ವಿತ ಪರಶುಧಾರನೆ
ರಜತಗಿರಿಗೊಡೆಯನ ಕುಮಾರನೆ ವಿದ್ಯೆವಾರಿಧಿಯೆ
ಅಜನು ಹರಿ ರುದ್ರಾದಿಗಳು ನೆರೆ
ಭಜಿಸುತಿಹರನವರತ ನಿನ್ನನು
ತ್ರಿಜಗವಂದಿತ ಗಣಪ ಮಾಳ್ಪುದು ಮತಿಗೆ ಮಂಗಳವ ೪

ವಾರಿಜಾಸನೆ ಸಕಲಶಾಸ್ತ್ರ ವಿ
ಚಾರದುದ್ಭವೆ ವಚನರಚನೋ
ದ್ಧಾರೆ ಶ್ರುತಿ ಪೌರಾಣದಾಗಮ ಸಿದ್ಧಿದಾಯಕಿಯೆ
ಶೌರಿ ಸುರಪತಿ ಸಕಲ ಮುನಿಜನ
ಸೂರಿಗಳಿಗನುಪಮದ ಯುಕುತಿಯೆ
ಶಾರದೆಯೆ ನರ್ತಿಸುಗೆ ನಲಿದೊಲಿದೆನ್ನ ಜಿಹ್ವೆಯಲಿ ೫

ಆದಿ ನಾರಾಯಣಿ ಪರಾಯಣಿ
ನಾದಮಯೆ ಗಜಲಕ್ಷ್ಮಿ ಸತ್ವಗು
ಣಾಧಿದೇವತೆ ಅಮರ ವಂದಿತ ಪಾದಪಂಕರುಹೆ
ವೇದಮಾತೆಯೆ ವಿಶ್ವತೋಮುಖೆ
ಯೈದು ಭೂತಾಧಾರಿಯೆನಿಪೀ
ದ್ವಾದಶಾತ್ಮ ಜ್ಯೋತಿರೂಪಿಯೆ ನಾದೆ ಶಾರದೆಯೆ ೬

ವೀರನಾರಾಯಣನೆ ಕವಿ ಲಿಪಿ
ಕಾರ ಕುವರವ್ಯಾಸ ಕೇಳುವ
ಸೂರಿಗಳು ಸನಕಾದಿಗಳು ಜಂಗಮ ಜನಾರ್ದನರು
ಚಾರುಕವಿತೆಯ ಬಳಕೆಯಲ್ಲ ವಿ
ಚಾರಿಸುವಡಳವಲ್ಲ ಚಿತ್ತವ
ಧಾರು ಹೋ ಸರ್ವಜ್ಞರಾದರು ಸಲುಗೆ ಬಿನ್ನಪವ ೭

ಶ್ರೀಮದಮರಾಧೀಶ ನತಪದ
ತಾಮರಸ ಘನವಿಪುಳ ನಿರ್ಮಲ
ರಾಮನನುಪಮ ಮಹಿಮ ಸನ್ಮುನಿ ವಿನುತ ಜಗಭರಿತ
ಶ್ರೀಮದೂರ್ಜಿತ ಧಾಮ ಸುದಯಾ
ನಾಮನಾಹವ ಭೀಮ ರಘುಕುಲ
ರಾಮ ರಕ್ಷಿಸುವೊಲಿದು ಗದುಗಿನ ವೀರನಾರಯಣ ೮

ಶರಧಿಸುತೆ ಸನಕಾದಿ ವಂದಿತೆ
ಸುರನರೋರಗ ಮಾತೆ ಸುಜನರ
ಪೊರೆವ ದಾತೆ ಸುರಾಗ್ರಗಣ್ಯಸುಮೌನಿ ವರಸ್ತುತ್ಯೆ
ಪರಮ ಕರುಣಾ ಸಿಂಧು ಪಾವನ
ಚರಿತೆ ಪದ್ಮಜ ಮುಖ್ಯ ಸಕಲಾ
ಮರ ಸುಪೂಜಿತೆ ಲಕ್ಷ್ಮಿ ಕೊಡುಗೆಮಗಧಿಕ ಸಂಪದವ ೯

ಗಜಮುಖನ ವರಮಾತೆ ಗೌರಿಯೆ
ತ್ರಿಜಗದರ್ಚಿತ ಚಾರು ಚರಣಾಂ
ಬುಜೆಯೆ ಪಾವನಮೂರ್ತಿ ಪದ್ಮಜಮುಖ್ಯ ಸುರಪೂಜ್ಯೆ
ಭಜಕರಘು ಸಂಹರಣೆ ಸುಜನ
ವ್ರಜ ಸುಸೇವಿತೆ ಮಹಿಷ ಮರ್ದಿನಿ
ಭುಜಗ ಭೂಷಣನರಸಿ ಕೊಡು ಕಾರುಣ್ಯದಲಿ ಮತಿಯ ೧೦

ದುರಿತಕುಲಗಿರಿ ವಜ್ರದಂಡನು
ಧರೆಯ ಜಂಗಮ ಮೂರ್ತಿ ಕವಿ ವಾ
ರಿರುಹ ದಿನಮಣಿ ನಿಖಿಲ ಯತಿಪತಿ ದಿವಿಜವಂದಿತನು
ತರಳನನು ತನ್ನವನೆನುತ ಪತಿ
ಕರಿಸಿ ಮಗನೆಂದೊಲಿದು ಕರುಣದಿ
ವರವನಿತ್ತನು ದೇವ ವೇದವ್ಯಾಸ ಗುರುರಾಯ ೧೧

ವಂದಿತಾಮಳ ಚರಿತನಮರಾ
ನಂದ ಯದುಕುಲ ಚಕ್ರವರ್ತಿಯ
ಕಂದ ನತಸಂಸಾರ ಕಾನನ ಘನ ದವಾನಳನು
ನಂದನಂದನ ಸನ್ನಿಭನು ಸಾ
ನಂದದಿಂದಲೆ ನಮ್ಮುವನು ಕೃಪೆ
ಯಿಂದ ಸಲಹುಗೆ ದೇವ ಜಗದಾರಾಧ್ಯ ಗುರುರಾಯ ೧೨

ತಿಳಿಯ ಹೇಳುವೆ ಕೃಷ್ಣಕಥೆಯನು
ಇಳೆಯ ಜಾಣರು ಮೆಚ್ಚುವಂತಿರೆ
ನೆಲೆಗೆ ಪಂಚಮ ಶ್ರುತಿಯನೊರೆವೆನು ಕೃಷ್ಣ ಮೆಚ್ಚಲಿಕೆ
ಹಲವು ಜನ್ಮದ ಪಾಪ ರಾಶಿಯ
ತೊಳೆವ ಜಲವಿದು ಶ್ರೀಮದಾಗಮ
ಕುಲಕೆ ನಾಯಕ ಭಾರತಾಕೃತಿ ಪಂಚಮ ಶ್ರುತಿಯ ೧೩

ಪದದ ಪ್ರೌಢಿಯ ನವರಸಂಗಳ
ವುದಿತವೆನುವಭಿಧಾನ ಭಾವವ
ಬೆದಕಲಾಗದು ಬಲ್ಲ ಪ್ರೌಢರುಮಿಾ ಕಥಾಂತರಕೆ
ಇದ ವಿಚಾರಿಸೆ ಬಱಿಯ ತೊಳಸಿಯ
ವುದಕದಂತಿರೆಯಿಲ್ಲಿ ನೋಳ್ಪುದು
ಪದುಮನಾಭನ ಮಹಿಮೆ ಧರ್ಮವಿಚಾರ ಮಾತ್ರವನು ೧೪

ಹಲಗೆ ಬಳಪವ ಪಿಡಿಯದೊಂದ
ಗ್ಗಳಿಕೆ ಪದವಿಟ್ಟಳುಪದೊಂದ
ಗ್ಗಳಿಕೆ ಪರರೊಡ್ಡವದ ರೀತಿಯ ಕೊಳ್ಳದಗ್ಗಳಿಕೆ
ಬಳಸಿ ಬರೆಯಲು ಕಂಠಪತ್ರದ
ವುಲುಹುಗೆಡದಗ್ಗಳಿಕೆಯೆಂಬೀ
ಬಲುಹು ಗದುಗಿನ ವೀರನಾರಾಯಣನ ಕಿಂಕರಗೆ ೧೫

ಕೃತಿಯನವಧರಿಸುವುದು ಸುಕವಿಯ
ಮತಿಗೆ ಮಂಗಳವೀವುದಧಿಕರು
ಮಥಿಸುವುದು ತಿದ್ದುವುದು ಮೆರೆವುದು ಲೇಸ ಸಂಚಿಪುದು
ನುತಗುಣರು ಭಾವುಕರು ವರಪಂ
ಡಿತರು ಸುಜನರು ಸೂಕ್ತಿಕಾರರು
ಮತಿಯನೀವುದು ವೀರನಾರಾಯಣನ ಕಿಂಕರಗೆ ೧೬

ತಿಣಿಕಿದನು ಫಣಿರಾಯ ರಾಮಾ
ಯಣದ ಕವಿಗಳ ಭಾರದಲಿ ತಿಂ
ತಿಣಿಯ ರಘುವರ ಚರಿತೆಯಲಿ ಕಾಲಿಡಲು ತೆರಪಿಲ್ಲ
ಬಣಗು ಕವಿಗಳ ಲೆಕ್ಕಿಪನೆ ಸಾ
ಕೆಣೆಸದಿರು ಶುಕರೂಪನಲ್ಲವೆ
ಕುಣಿಸಿ ನಗನೇ ಕವಿ ಕುಮಾರವ್ಯಾಸನುಳಿದವರ ೧೭

ಹರಿಯ ಬಸುರೊಳಗಖಿಳ ಲೋಕದ
ವಿರಡವಡಗಿಹವೋಲು ಭಾರತ
ಶರಧಿಯೊಳಗಡಗಿಹವನೇಕ ಪುರಾಣ ಶಾಸ್ತ್ರಗಳು
ಪರಮ ಭಕ್ತಿಯಲೀ ಕೃತಿಯನವ
ಧರಿಸಿ ಕೇಳ್ದಾ ನರರ ದುರಿತಾಂ
ಕುರದ ಬೇರಿನ ಬೇಗೆಯೆಂದರುಹಿದನು ಮುನಿನಾಥ ೧೮

ಅರಸುಗಳಿಗಿದು ವೀರ ದ್ವಿಜರಿಗೆ
ಪರಮ ವೇದದ ಸಾರ ಯೋಗೀ
ಶ್ವರರ ತತ್ವವಿಚಾರ ಮಂತ್ರಿಜನಕ್ಕೆ ಬುದ್ಧಿಗುಣ
ವಿರಹಿಗಳ ಶೃಂಗಾರ ವಿದ್ಯಾ
ಪರಿಣತರಲಂಕಾರ ಕಾವ್ಯಕೆ
ಗುರುವೆನಲು ರಚಿಸಿದ ಕುಮಾರವ್ಯಾಸ ಭಾರತವ ೧೯

ವೇದ ಪಾರಾಯಣದ ಫಲ ಗಂ
ಗಾದಿ ತೀರ್ಥಸ್ನಾನ ಫಲ ಕೃ
ಚ್ಛ್ರಾದಿ ತಪಸಿನ ಫಲವು ಜ್ಯೋತಿಷ್ಟೋಮಯಾಗ ಫಲ
ಮೇದಿನಿಯನೊಲಿದಿತ್ತ ಫಲ ವ
ಸ್ತ್ರಾದಿ ಕನ್ಯಾದಾನ ಫಲವಹು
ದಾದರಿಸಿ ಭಾರತದೊಳೊಂದಕ್ಷರವ ಕೇಳ್ದರಿಗೆ ೨೦

ಹೇಮ ಖುರ ಶೃಂಗಾಭರಣದಲಿ
ಕಾಮಧೇನು ಸಹಸ್ರ ಕಪಿಲೆಯ
ಸೋಮ ಸೂರ್ಯ ಗ್ರಹಣದಲಿ ಸುರನದಿಯ ತೀರದಲಿ
ಶ್ರೀಮುಕುಂದಾರ್ಪಣವೆನಿಸಿ ಶತ
ಭೂಮಿದೇವರಿಗಿತ್ತ ಫಲವಹು
ದೀ ಮಹಾಭಾರತದೊಳೊಂದಕ್ಷರವ ಕೇಳ್ದರಿಗೆ ೨೧

ಚೋರ ನಿಂದಿಸಿ ಶಶಿಯ ಬೈದಡೆ
ಕ್ಷೀರವನು ಕ್ಷಯರೋಗಿ ಹಳಿದರೆ
ವಾರಣಾಸಿಯ ಹೆಳವ ನಿಂದಿಸಿ ನಕ್ಕರೇನಹುದು
ಭಾರತದ ಕಥನ ಪ್ರಸಂಗವ
ಕ್ರೂರ ಕರ್ಮಿಗಳೆತ್ತ ಬಲ್ಲರು
ಘೋರರೌರವವನ್ನು ಕೆಡಿಸುಗು ಕೇಳ್ದ ಸಜ್ಜನರ ೨೨

ವೇದಪುರುಷನ ಸುತನ ಸುತನ ಸ
ಹೋದರನ ಹೆಮ್ಮಗನ ಮಗನ ತ
ಳೋದರಿಯ ಮಾತುಳನ ರೂಪನನತುಳ ಭುಜಬಲದಿ
ಕಾದಿ ಗೆಲಿದನನಣ್ಣನಪ್ಪೆಯ
ನಾದಿನಿಯ ಜಠರದಲಿ ಜನಿಸಿದ
ನಾದಿ ಮೂರುತಿ ಸಲಹೊ ಗದುಗಿನ ವೀರನಾರಯಣ ೨೩

ಎರಡನೆಯ ಸಂಧಿ

ಸೂ. ರಾಯ ಜನಮೇಜಯಗೆ ವೈಶಂ
ಪಾಯನನು ಹೇಳಿದನು ಮುನಿ ದ್ವೈ
ಪಾಯನಭಿವರ್ಣಿಸಿದ ಭಾರತ ವರ ಕಥಾಮೃತವ

ಸೂತನೈತಂದನು ಜಗದ್ವಿ
ಖ್ಯಾತ ಶೌನಕಮುಖ್ಯ ಮುನಿ ಸಂ
ಘಾತ ಪಾವನ ನೈಮಿಶಾರಣ್ಯಕ ವರಾಶ್ರಮಕೆ
ಆತನನು ಕಂಡುದು ತಪಸ್ವಿ
ವ್ರಾತ ಕುಶಲಕ್ಷೇಮ ಮಧುರ
ಪ್ರೀತಿ ವಚನಾಮೃತದಿ ಸಂಭಾವನೆಯ ಮಾಡಿದರು ೧

ಪರಮ ಪೌರಾಣಿಕ ಶಿರೋಮಣಿ
ಬರವಿದೆತ್ತಣವಾಯ್ತು ಕೌತುಕ
ವರಕಥಾ ಪೀಯೂಷಸಾರ ವಿಶೇಷವೇನುಂಟು
ಚರಿತ ಚತುರಾಶ್ರಮ ತಪೋ ನಿ
ಷ್ಠರಿಗೆ ವಿಶ್ರಮವೈ ಭವಾದೃಶ
ದರುಶನವು ನಮಗೆಂದು ನುಡಿದರು ರೋಮಹರ್ಷಣಿಯ ೨

ವಂದಿಸಿದನೈ ವರತಪೋಧನ
ವೃಂದ ಚಿತ್ತೈಸುವುದು ತಾನೇ
ನೆಂದು ನುಡಿವೆನು ಕೌತುಕಾಮೃತರಸದ ಕಡುಗಡಲ
ಹಿಂದೆ ಕೇಳಿದುದಲ್ಲ ಹೇಳ್ವುದು
ಮುಂದೆ ಹೊಸತಿದು ನಿಗಮಶತವಿದ
ರೊಂದೊರೆಗೆ ನೆರೆ ಬಾರದೆಂದನು ಸೂತ ಕೈಮುಗಿದು ೩

ಕೇಳಿದನು ಜನಮೇಜಯ ಕ್ಷಿತಿ
ಪಾಲಕನು ವರ ಸರ್ಪಯಜ್ಞ
ಸ್ಥೂಲ ಪಾಪವಿಘಾತಿಗೋಸುಗವೀ ಮಹಾಕಥೆಯ
ಕೇಳಿದೆನು ತಾನಲ್ಲಿ ಮುನಿಜನ
ಮೌಳಿಮಂಡಿತ ಚರಣಕಮಲ ವಿ
ಶಾಲ ವೇದವ್ಯಾಸಕೃತ ಭಾರತ ಕಥಾಮೃತವ ೪

ಹಾ ಮಹಾದೇವಾಯಿದೆಂತೈ
ರೋಮ ಹರ್ಷಣಿ ನಾವು ಮಾಡಿದ
ಸೋಮ ಪಾನಾದಿಗಳ ಪುಣ್ಯಸ್ತೋಮ ತರುಗಳಿಗೆ
ಈ ಮಹಾಭಾರತ ಕಥಾಮೃತ
ರಾಮಣೀಯಕ ಫಲವಲಾ ನಿ
ಸ್ಸೀಮ ಪುಣ್ಯರು ಧನ್ಯರಾವೆಂದುದು ಮುನಿಸ್ತೋಮ ೫

ಹೇಳು ಸಾಕೆಲೆ ಸೂತ ದುರಿತ
ವ್ಯಾಳ ವಿಷಜಾಂಗುಳಿಕವನು ನೀ
ಕೇಳಿದಂದದೊಳಂದು ಜನಮೇಜಯನ ಯಾಗದಲಿ
ಮೌಳಿಗಳಲಾನುವೆವು ನಿನ್ನಯ
ಹೇಳಿಕೆಯನೆನೆ ನಿಖಿಳ ಮುನಿಗಳ
ನೋಲಗಿಸುವೆನು ನಿಮ್ಮನುಜ್ಞೆಯಲೆಂದು ಕೈಮುಗಿದ ೬

ಸರ್ಪಯಜ್ಞದಲಾದ ದುರಿತದ
ದರ್ಪವನು ಕೆಡೆಬೀಳಲೊದೆಯಲು
ತರ್ಪಣಾದಿ ಕ್ರಿಯೆಗಳಲಿ ಸಾಮರ್ಥ್ಯವಿಲ್ಲೆಂದು
ದರ್ಪಕಾಹಿತಮೂರ್ತಿ ಮುನಿಮುಖ
ದರ್ಪಣನು ಶಿಷ್ಯನನು ಕರೆದು ಸ
ಮರ್ಪಿಸಿದನರಸಂಗೆ ವೇದವ್ಯಾಸ ಮುನಿರಾಯ ೭

ರಾಯ ಕೇಳೈ ನಿಮ್ಮ ಪಾಂಡವ
ರಾಯಚರಿತವನೆಂದು ವೈಶಂ
ಪಾಯನಿಗೆ ಬೆಸಸಿದನು ಕೊಟ್ಟನು ಬಳಿಕ ಪುಸ್ತಕವ
ರಾಯನತಿ ಭಕ್ತಿಯಲಿ ವೈಶಂ
ಪಾಯನಗೆ ವಂದಿಸಿ ನಿಜಾಭಿ
ಪ್ರಾಯವನು ಕೇಳಿದನು ಚಿತ್ತೈಸುವುದು ಮುನಿನಿಕರ ೮

ವಿತತ ಪುಸ್ತಕವನು ಸುಗಂಧಾ
ಕ್ಷತೆಯೊಳರ್ಚಿಸಿ ಸೋಮ ಸೂರ್ಯ
ಕ್ಷಿತಿ ಜಲಾನಲ ವಾಯು ಗಗನಾದಿಗಳಿಗಭಿನಮಿಸಿ
ಶತಮುಖಾದಿ ಸಮಸ್ತ ದೇವ
ಪ್ರತತಿಗೆರಗಿ ಸರೋಜಭವ ಪಶು
ಪತಿಗಳಿಗೆ ಕೈಮುಗಿದು ವಿಮಲ ಜ್ಞಾನಮುದ್ರೆಯಲಿ ೯

ಮನದೊಳಾದ್ಯಂಪುರುಷಮೀಶಾ
ನನನು ಪುರುಹೂತ ಪುರಸ್ಕೃತ
ನನಘನೇಕಾಕ್ಷರ ಪರಬ್ರಹ್ಮನ ಸನಾತನನ
ದನುಜರಿಪು ಸುವ್ಯಕ್ತನವ್ಯ
ಕ್ತನನು ಸದಸದ್ರೂಪನವ್ಯಯ
ನೆನಿಪ ವಿಷ್ಣುವ ನೆನೆದು ಮುನಿ ವಿಸ್ತರಿಸಿದನು ಕಥೆಯ ೧೦

ವೇದ ನಾಲ್ಕದರಂಗವಾರ
ಷ್ಟಾದಶಾದಿ ಪುರಾಣ ಸ್ಮೃತಿಗಳೊ
ಳಾದ ಪೂರ್ವೋತ್ತರದ ಮೀಮಾಂಸದ ಪರಿಕ್ರಮದ
ವಾದ ವಿಲಸನ್ನ್ಯಾಯವನು ಶ
ಬ್ದೋದಧಿಯನಳವಡಿಸಿ ರಚಿಸಿದ
ಬಾದರಾಯಣನಂಘ್ರಿಯನು ಭಜಿಸಿದನು ಮನದೊಳಗೆ ೧೧

ಅರಸ ಕೇಳೈ ನಾರದಾದ್ಯರು
ಸರಸಿರುಹ ಸಂಭವನ ಸಭೆಯೊಳು
ವರ ಮಹಾಭಾರತವ ಕೊಂಡಾಡಿದರು ಭಕ್ತಿಯಲಿ
ವರ ಮಹತ್ವದಿ ಭಾರವತ್ವದಿ
ವರ ಮಹಾಭಾರತವಿದೊಂದೇ
ದುರಿತ ದುರ್ಗ ವಿಭೇದಕರವಿ ರೇಳು ಲೋಕದಲಿ ೧೨

ಹೇಳಿದನು ಪೌಲೋಮ ಚರಿತೋ
ದ್ದಾಲಕಾಖ್ಯರ ಚರಿತವನು ಮುನಿ
ಹೇಳಿದನು ಫಣಿನಿಕರ ಗರುಡಾಸ್ತಿಕರ ಸಂಭವವ
ಮೇಲೆ ಬಳಿಕ ಪರೀಕ್ಷಿದವನೀ
ಪಾಲ ಶಾಪದ ಮರಣವನು ನೆರೆ
ಹೇಳಿದನು ಮುನಿಗಳಿಗೆ ಸರ್ಪಾಧ್ವರದ ಸಂಗತಿಯ ೧೩

ಕೇಳಿದನು ಜನಮೇಜಯ ಕ್ಷಿತಿ
ಪಾಲ ವೈಶಂಪಾಯನನು ತಾ
ಕೇಳು ದುರಿತಂಗಳಿಗೆ ಪ್ರಾಯಶ್ಚಿತ್ತ ರೂಪದಲಿ
ಕೇಳಿರೈ ಮುನಿನಿಕರವೀ ಕಲಿ
ಕಾಲದಲಿ ಫಲಿಸುವುದು ಲಕ್ಷ್ಮೀ
ಲೋಲ ನಾಮಸ್ತುತಿ ಮಹಾಭಾರತ ಕಥಾಶ್ರವಣ ೧೪

ರಾಯ ಚಿತ್ತೈಸೆಂದು ವೈಶಂ
ಪಾಯಮುನಿ ಹೇಳಿದನು ಕಮಲ ದ
ಳಾಯತಾಕ್ಷನ ಬಾಲಕೇಳಿ ವಿಧೂತಕಿಲ್ಬಿಷವ
ಕಾಯ ಕಲ್ಮಷಹರವಖಿಳ ನಿ
ಶ್ರೇಯಸದ ಸದ್ರೂಪುವಿನ ಸಂ
ದಾಯಕವ ನಿರ್ಮಲ ಮಹಾಭಾರತ ಕಥಾಮೃತವ ೧೫

ಆದಿ ಸೃಷ್ಟಿಯೊಳುದಿಸಿದರು ದ
ಕ್ಷಾದಿ ವಿಮಲ ನವಪ್ರಜೇಶ್ವರ
ರಾದರಂಬುಜಭವನ ಲೀಲಾಮಾತ್ರ ಸೂತ್ರದಲಿ
ಆದನವರೊಳಗತ್ರಿಮುನಿ ಬಳಿ
ಕಾದನಾ ಮುನಿಪತಿಗೆ ಜಗದಾ
ಹ್ಲಾದಕರ ಹಿಮಕಿರಣನಾತನಲಾಯ್ತು ಶಶಿವಂಶ ೧೬

ಸೋಮನಿಂ ಬುಧನಾ ಬುಧಂಗೆಯು
ಭೂಮಿಯಲ್ಲಿ ಪುರೂರವನು ಬಳಿ
ಕಾ ಮಹೀಪತಿಗೂರ್ವಶಿಯೊಳಾಯುಃಕುಮಾರಕನು
ಆ ಮಹೀಶಗೆ ನಹುಷ ನಹುಷಂ
ಗಾ ಮಹಾತ್ಮ ಯಯಾತಿ ಬಳಿಕೀ
ಸೋಮಕುಲವೆರಡಾಯ್ತು ಯದು ಪೂರುಗಳ ದೆಸೆಯಿಂದ ೧೭

ಯದು ಪರಂಪರೆಯಿಂದ ಯಾದವ
ರುದಿಸಿದರು ಪೂರುವಿನ ದೆಸೆಯಿಂ
ದಿದುವೆ ಕೌರವ ವಂಶವಾಯ್ತು ಯಯಾತಿ ಪೌತ್ರರಲಿ
ವಿದಿತ ಪೂರ್ವೋತ್ತರದ ಯದು ವಂ
ಶದ ಕಥಾವಿಸ್ತಾರವನು ಹೇ
ಳಿದನು ದುಷ್ಯಂತನಲಿ ಶಾಕುಂತಲೆಯ ಕಥೆ ಸಹಿತ ೧೮

ಭರತನಾ ದುಷ್ಯಂತನಿಂದವ
ತರಿಸಿದನು ತತ್ಪೂರ್ವ ನೃಪರಿಂ
ಹಿರಿದು ಸಂದನು ಬಳಿಕ ಭಾರತವಂಶವಾಯ್ತಲ್ಲಿ
ಭರತಸೂನು ಸುಹೋತ್ರನಾತನ
ವರ ಕುಮಾರಕ ಹಸ್ತಿ ಹಸ್ತಿನ
ಪುರಿಗೆ ಹೆಸರಾಯ್ತಾತನಿಂದವೆ ನೃಪತಿ ಕೇಳೆಂದ ೧೯

ವರಕುಮಾರರ ಪಂಕ್ತಿಯಲಿ ಸಂ
ವರಣನಾತಗೆ ಸೂರ್ಯಪುತ್ರಿಗೆ
ಕುರು ಮಹೀಪತಿ ಜನಿಸಿದನು ಬಳಿಕಾಯ್ತು ಕುರುವಂಶ
ವರ ಪರಂಪರೆಯೊಳ್ ಪ್ರತೀಪನು
ಧರಣಿಪತಿಯಾತನಲಿ ಶಂತನು
ಧರೆಗಧೀಶ್ವರನಾಗಿ ಬೆಳಗಿದನರಸ ಕೇಳೆಂದ ೨೦

ಸರಸಿಜಾಸನ ಕೊಟ್ಟ ಶಾಪದಿ
ಯರಸಿಯಾದಳು ಗಂಗೆ ಬಳಿಕಿ
ಬ್ಬರಿಗೆ ಮಕ್ಕಳು ವಸುಗಳೆಂಟು ವಸಿಷ್ಠ ಶಾಪದಲಿ
ನಿರಪರಾಧಿಗಳೇಳು ಜನನಾಂ
ತರಕೆ ಮರಣವ ಕಂಡರುಳಿದಂ
ಗಿರವು ಭೂಲೋಕದಲಿ ಬಲಿದುದು ಭೀಷ್ಮನಾಮದಲಿ ೨೧

ಶಾಪ ಹಿಂಗಿತು ಸುರನದಿಗೆ ಬಳಿ
ಕಾ ಪರಾಕ್ರಮಿ ಭೀಷ್ಮ ಶಂತನು
ಭೂಪತಿಗೆ ಮಗನಾಗಿ ಬೆಳಗಿನಖಿಳ ದಿಕ್ತಟವ
ಭೂಪ ಕೇಳೈ ಉಪರಿಚರ ವಸು
ರೂಪಗರ್ಭವು ಮೀನ ಬಸುರಲಿ
ವ್ಯಾಪಿಸಿತು ಜನಿಸಿದುದು ಮಿಥುನವು ಮತ್ಸ್ಯ ಜಠರದಲಿ ೨೨

ಬಳಿಕ ಮತ್ಸ್ಯದ ಬಸುರಲುದಿಸಿದ
ನಳಿನಲೋಚನೆ ಮತ್ಸ್ಯಗಂಧಿನಿ
ಬೆಳೆವುತಿರ್ದಳು ಸಂಗವಾಯ್ತು ಪರಾಶರವ್ರತಿಯ
ಬಳಿಕ ಯೋಜನಗಂಧಿಯಲ್ಲಿಂ
ದಿಳಿದನಭ್ರಶ್ಯಾಮನುರು ಪಿಂ
ಗಳ ಜಟಾಪರಿಬದ್ಧ ವೇದವ್ಯಾಸ ಮುನಿರಾಯ ೨೩

ನೆನೆ ವಿಪತ್ತಿನೊಳೆಂದು ತಾಯನು
ತನುಜ ಬೀಳ್ಕೊಂಡನು ಪರಾಶರ
ಮುನಿ ಪುನಃ ಕನ್ಯತ್ವವನು ಕರುಣಿಸಿದನಾ ಸತಿಗೆ
ವಿನುತ ಯಮುನಾ ತೀರದಲಿ ಮಾ
ನಿನಿಯ ಕಂಡನು ಬೇಂಟೆಯಾಡುತ
ಜನಪ ಶಂತನು ಮರುಳುಗೊಂಡನು ಮದನನೆಸುಗೆಯಲಿ ೨೪

ಪರಿಮಳದ ಬಳಿವಿಡಿದು ಬಂದೀ
ತರುಣಿಯನು ಕಂಡಾರು ನೀನೆಂ
ದರಸ ಬೆಸಗೊಳುತೆಸುವ ಕಾಮನ ಶರಕೆ ಮೈಯೊಡ್ಡಿ
ಅರಮನೆಗೆ ನಡೆಯೆನಲು ತಂದೆಯ
ಪರಮ ವಚನವಲಂಘ್ಯವೆನೆ ಕಾ
ತರಿಸಿ ಭಗ್ನ ಮನೋರಥನು ಮರಳಿದನು ಮಂದಿರಕೆ ೨೫

ವಿರಹದಾವುಗೆ ಕಿಚ್ಚು ಭೂಮೀ
ಶ್ವರನ ಮುಸುಕಿತು ಬಲಿದವಸ್ಥೆಯ
ನರಸ ಬಣ್ಣಿಸಲರಿಯೆನೇಳೆಂಟೊಂಬತರ ಬಳಿಯ
ಮರಣವೀತಂಗೆಂಬ ಜನದು
ಬ್ಬರದ ಗುಜುಗುಜುವರಿದು ಯಮುನಾ
ವರನದಿಯ ತೀರಕ್ಕೆ ಬಂದನು ಭೀಷ್ಮ ವಹಿಲದಲಿ ೨೬

ಕರೆಸಿದನು ಧೀವರನನಯ್ಯಂ
ಗರಸಿಯಾಗಲಿ ನಿನ್ನ ಮಗಳಿನ
ಲರಸಿಯಾದರೆ ಮಗಳ ಮಕ್ಕಳು ರಾಜ್ಯವಾಳುವರೆ
ಅರಿದು ಸಲಿಸುವಡಿದನು ನೀ ಬರಿ
ಯರಸುತನ ನಮಗೇಕೆನಲು ಧೀ
ವರನ ಮಾತಿಂಗೀತನೆಂದನು ರಾಯ ಕೇಳೆಂದ ೨೭

ಆದರಿಲ್ಲಿಂ ಮೇಲೆ ನಾರಿಯು
ರಾದವರು ಭಾಗೀರಥಿಗೆ ಸರಿ
ಮೇದಿನಿಯು ಸಲಿಸುವೆನು ನಿನ್ನಯ ಮಗಳ ಮಕ್ಕಳಿಗೆ
ಈ ದಿವಿಜರೀ ಹರಿ ಹರ ಬ್ರ
ಹ್ಮಾದಿ ದೇವರು ಸಾಕ್ಷಿ ಹೋಗೆಂ
ದಾ ದಯಾಂಬುಧಿ ನಗುತ ನಿನ್ನಯ ಮಗಳ ಕರೆಸೆಂದ ೨೮

ತರಿಸಿದನು ದಂಡಿಗೆಯ ದಂಡಿಯ
ಚರರ ನೆಲನುಗ್ಗಡಣೆಯಲಿ ಸರ
ಸಿರುಹಮುಖಿಯನು ತಂದು ಮದುವೆಯ ಮಾಡಿದನು ಪಿತಗೆ
ಉರವಣಿಸಿ ಮಗ ನುಡಿದ ಭಾಷೆಯ
ನರಸ ಕೇಳಿದು ಬಳಿಕ ಭೀಷ್ಮಗೆ
ವರವನಿತ್ತನು ಮರಣವದು ನಿನ್ನಿಚ್ಛೆ ಹೋಗೆಂದ ೨೯

ಬಳಿಕ ಯೋಜನಗಂಧಿಯಲಿ ಮ
ಕ್ಕಳುಗಳವತರಿಸಿದರು ದೀಪ್ತ
ಜ್ವಲನತೇಜರು ಕಲ್ಪಭೂಜರು ಹಿಮಕರಾನ್ವಯಕೆ
ಲಲಿತ ಮಂಗಳ ಜಾತಕರ್ಮಾ
ವಳಿಯ ಚಿತ್ರಾಂಗದನನಾ ನೃಪ
ತಿಲಕ ನೆಗಳೆ ವಿಚಿತ್ರವೀರ್ಯನ ನಾಮಕರಣದಲಿ ೩೦

ಇರಲಿರಲು ಶಂತನು ಮಹೀಪತಿ
ಸುರರೊಳಗೆ ಸೇರಿದನು ಬಳಿಕೀ
ಧರಣಿಯೊಡೆತನವಾಯ್ತು ಚಿತ್ರಾಂಗದ ಕುಮಾರಂಗೆ
ಅರಸ ಕೇಳೈ ಕೆಲವು ಕಾಲಾಂ
ತರದಲಾತನು ಕಾದಿ ಗಂಧ
ರ್ವರಲಿ ಮಡಿದನು ಪಟ್ಟವಾಯ್ತು ವಿಚಿತ್ರವೀರ್ಯಂಗೆ ೩೧

• ರಾಯ ಕೇಳೈ ಸಕಲ ರಾಜ್ಯ
ಶ್ರೀಯನಾತಂಗಿತ್ತು ಭೀಷ್ಮನು
ತಾಯ ಚಿತ್ತವ ಪಡೆದು ಮೆಚ್ಚಿಸಿದನು ಜಗತ್ರಯವ
ರಾಯ ಕುವರನ ಮದುವೆಗಬ್ಜ ದ
ಳಾಯತಾಕ್ಷಿಯರನು ವಿಚಾರಿಸಿ
ಹಾಯಿದನು ದಳದುಳದೊಳೊಂದು ವಿವಾಹ ಮಂಟಪಕೆ ೩೨

ಅಲ್ಲಿ ನೆರೆದಾ ಕ್ಷತ್ರವರ್ಗವ
ಚೆಲ್ಲಬಡಿದು ವಿವಾಹ ಶಾಲೆಯ
ಚೆಲ್ಲೆಗಂಗಳ ಕಮಲಮುಖಿಯರ ಮೂವರನು ಪಿಡಿದು
ಫಲ್ಲಣೆಯ ಖಂಡೆಯದ ಚೌಪಟ
ಮಲ್ಲ ಭೀಷ್ಮನು ಪುರಕೆ ತಂದವ
ರೆಲ್ಲರನು ತಮ್ಮಂಗೆ ಮದುವೆಯ ಮಾಡಲನುವಾದ ೩೩

ಆ ಕಮಲಲೋಚನೆಯರೊಳು ಮೊದ
ಲಾಕೆ ಭೀಷ್ಮನ ಗಂಡನೆಂದೇ
ನೂಕಿ ಭಾಷೆಯ ಮಾಡಿ ನಿಂದಳು ಛಲದ ಬಿಗುಹಿನಲಿ
ಆಕೆ ಮಾಣಲಿ ಮಿಕ್ಕವರು ಬರ
ಲೀ ಕುಮಾರಂಗೆಂದು ವೈದಿಕ
ಲೌಕಿಕೋತ್ಸವದಿಂದ ಮದುವೆಯ ಮಾಡಿದನು ಭೀಷ್ಮ ೩೪

ಅರಸ ಚಿತ್ತೈಸಂಬೆಯೆಂಬಳು
ದುರುಳೆ ಭೀಷ್ಮನ ಕೂಟವಲ್ಲದೆ
ಮರಣದೆಡೆಯಲಿ ಬೆರಸಿದಲ್ಲದೆ ಪಂಥವಿಲ್ಲೆಂದು
ಪರಶುರಾಮನ ಭಜಿಸಿ ಹಸ್ತಿನ
ಪುರಕೆ ತಂದಳು ಹೇಳಿಸಿದಳೀ
ಸುರನದೀನಂದನನು ಮಾಡಿದ ಪರಿಯ ಕೇಳೆಂದ ೩೫

ಸತಿಯನೊಲ್ಲೆನು ಬ್ರಹ್ಮಚರ್ಯ
ಸ್ಥಿತಿಗೆ ತಪ್ಪುವನಲ್ಲ ನೀವನು
ಚಿತವ ನೆನೆದರೆ ನಡೆಯಿ ಕೊಟ್ಟೆನು ಕಾಳಗವ ನಿಮಗೆ
ವ್ರತದನಿಧಿ ಕುರುಭೂಮಿಯಲಿ ಶರ
ತತಿಯಲಿಪ್ಪತ್ತೊಂದು ದಿನ ಭೃಗು
ಸುತನೊಡನೆ ಕಾದಿದನು ವಿರಥನ ಮಾಡಿದನು ಭೀಷ್ಮ ೩೬

ನುಡಿಯ ಭಂಗಿಸಲೆಂದು ಗುರುವವ
ಗಡಿಸಿ ಹೊಕ್ಕರೆ ಸರಳವೊನೆಯಲಿ
ಕೊಡಹಿ ಬಿಸುಟನು ಬಿಟ್ಟುದಿಲ್ಲ ಮಹಾವ್ರತಸ್ಥಿತಿಯ
ನುಡಿಯ ಮೀರದ ನಮ್ಮ ಶಿಷ್ಯನ
ನೊಡಬಡಿಸಿಕೊಳ್ಳೆಂದು ನಾರಿಗೆ
ನುಡಿದು ತನ್ನಾಶ್ರಮಕೆ ಸರಿದನು ಪರಶುರಾಮಮುನಿ ೩೭

ಅಂಬೆ ಭೀಷ್ಮನ ಬೈದು ಕಂಬನಿ
ದುಂಬಿ ಹೋದಳು ತಪಕೆ ಬಳಿಕೀ
ಯಂಬಿಕೆಯನಂಬಾಲೆಯನು ರಮಿಸಿದನು ನೃಪಸೂನು
ಬೆಂಬಲಕೆ ಕಲಿಭೀಷ್ಮನಿರೆ ಚತು
ರಂಬುಧಿಯ ಮಧ್ಯದ ನೃಪಾಲ ಕ
ದಂಬವೀತಂಗಿದಿರೆ ಸಲಹಿದನಖಿಳ ಭೂತಳವ ೩೮

ಮೂರನೆಯ ಸಂಧಿ

ಸೂ. ಚಂಡಮುನಿ ಮಂತ್ರಾಹ್ವಯದಿ ಬರೆ
ಚಂಡಕರ ತತ್ತೇಜನಾಹವ
ಚಂಡ ವಿಕ್ರಮನವನಿಯಲಿ ಜನಿಸಿದನು ಕಲಿಕರ್ಣ

ಅರಸ ಕೇಳೈ ಕೆಲವು ಕಾಲಾಂ
ತರಕೆ ನಿಮ್ಮ ವಿಚಿತ್ರವೀರ್ಯನು
ನೆರೆದನಮರಸ್ತ್ರೀಯರಲಿ ಬಳಿಕೀ ನದೀಸುತನ
ಕರೆದು ನುಡಿದಳು ಮಗನೆ ರಾಜ್ಯವ
ಧರಿಸು ನೀನಿನ್ನುತ್ತರದ ಹಿಮ
ಕರಕುಲವ ಬೆಳಗೆಂದು ಯೋಜನಗಂಧಿ ಬೆಸಸಿದಳು ೧

ತಾಯೆ ನಿಮ್ಮೋಪಾದಿ ರಾಜ್ಯ
ಸ್ತ್ರೀಯಳೆಂದಾ ನುಡಿಯೊಳಗೆ ಗಾಂ
ಗೇಯ ಮುಳುಗನು ಭೀಷ್ಮವಚನಕೆ ಬೇರೆ ಮೊಳೆಯುಂಟೆ
ಕಾಯಕಲ್ಪಸುಖಕ್ಕೆ ಘನ ನಿ
ಶ್ರೇಯಸವ ಕೆಡಿಸುವನೆ ಯೆಲವದ
ಕಾಯಿಗೋಸುಗ ಕಲ್ಪವೃಕ್ಷವ ಕಡಿವನಲ್ಲೆಂದ ೨

ಮರುಗಿ ಯೋಜನಗಂಧಿ ಚಿಂತೆಯ
ಸೆರೆಗೆ ಸಿಲುಕಿದಳೊಂದು ರಾತ್ರಿಯೊ
ಳರಿದು ನೆನೆದಳು ಪೂರ್ವಸೂಚಿತ ಪುತ್ರಭಾಷಿತವ
ಮುರಿದ ಭರತಾನ್ವಯದ ಬೆಸುಗೆಯ
ತೆರನು ತೋರಿತೆ ಪುಣ್ಯವೆನುತೆ
ಚ್ಚರಿತು ನುಡಿದಳು ಮಗನೆ ವೇದವ್ಯಾಸ ಬಹುದೆಂದು ೩

ಕೆಂಜೆಡೆಯ ಕೃಷ್ಣಾಜಿನದ ಮೊನೆ
ಮುಂಜೆರಗಿನುಡಿಗೆಯ ಬಲಾಹಕ
ಪುಂಜಕಾಂತಿಯ ಪಿಂಗತರಮುಖ ಕೇಶದುನ್ನತಿಯ
ಕಂಜನಾಭನ ಮೂರ್ತಿ ಶೋಭಾ
ರಂಜಿತನು ಜನದುರಿತ ದಶಮದ
ಭಂಜಕನು ತಾಯ್ಗೆರಗಿ ನುಡಿದನು ವ್ಯಾಸಮುನಿರಾಯ ೪

ನೆನೆದಿರೇನೌತಾಯೆ ಕೃತ್ಯವ
ನೆನಗೆ ಬೆಸಸೆನೆ ಮಗನೆ ಭಾರತ
ವಿನುತಕುಲ ಜಲರಾಶಿಯೆಡೆವರಿತುದು ವಿಚಿತ್ರನಲಿ
ತನುಜ ನೀನೇ ಬಲ್ಲೆಯೆನೆ ಕೇಳ್
ಜನನಿ ನಿಮ್ಮಡಿಯಾಜ್ಞೆಯಲಿ ಸಂ
ಜನಿಪುವೆನು ವೈಚಿತ್ರವೀರ್ಯ ಕ್ಷೇತ್ರದಲಿ ಸುತರ ೫

ಎಂದು ಬಳಿಕೇಕಾಂತ ಭವನದೊ
ಳಂದು ಮುನಿಯಿರಲಂಬಿಕೆಯನರ
ವಿಂದಮುಖಿಯಟ್ಟಿದಳು ಸೊಸೆಯನು ಮುನಿಯ ಪೊರೆಗಾಗಿ
ಬಂದು ಮುನಿಪನ ದಿವ್ಯರೂಪವ
ನಿಂದುಮುಖಿ ಕಂಡಕ್ಷಿಗಳ ಭಯ
ದಿಂದ ಮುಚ್ಚಿದಳಾಕೆ ತಿರುಗಿದಳರಸ ಕೇಳೆಂದ ೬

ಬಳಿಕಲಂಬಾಲಿಕೆಯನಲ್ಲಿಗೆ
ಕಳುಹಲಾಕೆಗೆ ಭಯದಿ ಮುಖದಲಿ
ಬಿಳುಪು ಮುಸಗಿತು ಮುನಿಯ ರೌದ್ರಾಕಾರದರ್ಶನದಿ
ಲಲನೆ ಮರಳಿದಳೊಬ್ಬ ಸತಿಯನು
ಕಳುಹಲಾ ವಧು ಚಪಲದೃಷ್ಟಿಯೊ
ಳೆಳುಕದೀಕ್ಷಿಸಲಾಯ್ತು ಗರ್ಭಾದಾನವನಿಬರಿಗೆ ೭

ಬಂದು ಮುನಿಪತಿ ತಾಯ್ಗೆ ಕೈಮುಗಿ
ದೆಂದನಂಬಿಕೆಯಲ್ಲಿ ಜನಿಸುವ
ನಂದನನು ಜಾತ್ಯಂಧನಂಬಾಲಿಕೆಗೆ ಪಾಂಡುಮಯ
ಬಂದ ಬಳಿಕಿನ ಚಪಲೆಗತಿಬಲ
ನೆಂದು ಹೇಳಿದು ತನಗೆ ನೇಮವೆ
ಯೆಂದು ತನ್ನಾಶ್ರಮಕೆ ಸರಿದನು ಬಾದರಾಯಣನು ೮

ತುಂಬಿದುದು ನವಮಾಸ ಜನಿಸಿದ
ನಂಬಿಕೆಯ ಬಸುರಿನಲಿ ಸೂನು ಗ
ತಾಂಬಕನು ಮಗನಾದನಂಬಾಲಿಕೆಗೆ ಪಾಂಡುಮಯ
ಚುಂಬಿಸಿತು ಪರಿತೋಷ ನವ ಪುಳ
ಕಾಂಬುಗಳು ಜನಜನಿತವದನೇ
ನೆಂಬೆನುತ್ಸವವನು ಕುಮಾರೋದ್ಭವದ ವಿಭವದಲಿ ೯

ಜಾತಕರ್ಮಾದಿಯನು ಪಾರ್ಥಿವ
ಜಾತಿ ವಿಧಿವಿಹಿತದಲಿ ಗಂಗಾ
ಜಾತ ಮಾಡಿಸಿ ತುಷ್ಟಿಪಡಿಸಿದ ನಿಖಿಳ ಯಾಚಕರ
ಈತನೇ ಧೃತರಾಷ್ಟ್ರನೆರಡನೆ
ಯಾತ ಪಾಂಡು ವಿಲಾಸಿನೀ ಸಂ
ಭೂತನೀತನು ವಿದುರನೆಂದಾಯ್ತುವರಿಗಭಿಧಾನ ೧೦

ಬೆಳೆವುತಿರ್ದರು ಹರಿಣಪಕ್ಷದ
ನಳಿನರಿಪುವಿನವೊಲ್ ಕುಮಾರರು
ಕುಲವಿಹಿತ ಚೌಲೋಪನಯನವನಿಬ್ಬರಿಗೆ ರಚಿಸಿ
ಕಲಿತ ವಿದ್ಯರ ಮಾಡಿ ತಾಯು
ಮ್ಮಳಿಸದಂತಿರೆ ಸೋಮವಂಶದ
ಬೆಳವಿಗೆಯನೇ ಮಾಡಿ ಕೊಂಡಾಡಿದನು ಕಲಿಭೀಷ್ಮ ೧೧

ಧಾರುಣೀಪತಿ ಚಿತ್ತವಿಸು ಗಾಂ
ಧಾರದೇಶದ ಸುಬಲರಾಜ ಕು
ಮಾರಿ ಕುಲವಧುವಾದಳಾ ಧೃತರಾಷ್ಟ್ರ ಭೂಪತಿಗೆ
ನಾರಿಯರೊಳುತ್ತಮೆಯಲಾ ಗಾಂ
ಧಾರಿಯೆನಿಸಿ ಪತಿವ್ರತಾ ವಿ
ಸ್ತಾರಗುಣದಲಿ ಮೆರೆದಳಬಲೆ ಸಮಸ್ತಜನ ಹೊಗಳೆ ೧೨

ಇತ್ತ ಕುಂತೀಭೋಜನೆಂಬ ನೃ
ಪೋತ್ತಮನ ಭವನದಲಿ ಮುರಹರ
ನತ್ತೆ ಬೆಳೆವುತ್ತಿರ್ದಳಾ ವಸುದೇವನೃಪನನುಜೆ
ಹೆತ್ತವರಿಗೋಲೈಸುವರಿಗೆ ಮ
ಹೋತ್ತಮರಿಗುಳಿದಖಿಳ ಲೋಕದ
ಚಿತ್ತಕಹುದೆನೆ ನಡೆವ ಗುಣದಲಿ ಮೆರೆದಳಾ ಕುಂತಿ ೧೩

ಒಂದು ದಿನ ದೂರ್ವಾಸಮುನಿ ನೃಪ
ಮಂದಿರಕೆ ಬರಲಾ ಮಹೀಪತಿ
ಬಂದ ಬರವಿನಲವರ ಮರೆದನು ರಾಜಕಾರ್ಯದಲಿ
ಇಂದು ಕುಂತೀಭೋಜನೊಡೆತನ
ಬೆಂದುಹೋಗಲಿಯೆಂಬ ಶಾಪವ
ನಿಂದುಮುಖಿ ನಿಲಿಸಿದಳು ಹೊರಳಿದಳವರ ಚರಣದಲಿ ೧೪

ತರುಣಿಯೊಡಗೊಂಡೊಯ್ದು ಕನ್ಯಾ
ಪರಮ ಭವನದಲಾ ಮುನಿಯನುಪ
ಚರಿಸಿದಳು ವಿವಿಧಾನ್ನ ಪಾನ ರಸಾಯನಂಗಳಲಿ
ಹರ ಮಹಾದೇವೀ ಮಗುವಿನಾ
ದರಣೆಗೀ ವಿನಯೋಪಚಾರಕೆ
ಹಿರಿದು ಮೆಚ್ಚಿದೆನೆಂದು ತಲೆದೂಗಿದನು ದೂರ್ವಾಸ ೧೫

ಮಗಳೆ ಬಾ ಕೊಳ್ ಐದು ಮಂತ್ರಾ
ಳಿಗಳನಿವು ಸಿದ್ಧಪ್ರಯೋಗವು
ಸೊಗಸು ದಿವಿಜರೊಳಾರ ಮೇಲುಂಟವರ ನೆನೆ ಸಾಕು
ಮಗನು ಜನಿಸುವನೆಂದು ಮುನಿ ಕುಂ
ತಿಗೆ ರಹಸ್ಯದೊಳರುಹಿ ಮುನಿ ಮೌ
ಳಿಗಳ ಮಣಿ ಪರಿತೋಷದಲಿ ಸರಿದನು ನಿಜಾಶ್ರಮಕೆ ೧೬

ಮಗುವುತನದಲಿ ಬೊಂಬೆಯಾಟಕೆ
ಮಗುವನೇ ತಹೆನೆಂದು ಬಂದಳು
ಗಗನನದಿಯಲಿ ಮಿಂದಳುಟ್ಟಳು ಲೋಹಿತಾಂಬರವ
ವಿಗಡಮುನಿಪನ ಮಂತ್ರವನು ನಾ
ಲಗೆಗೆ ತಂದಳು ರಾಗರಸದಲಿ
ಗಗನಮಣಿಯನು ನೋಡಿ ಕಣ್ಮುಚ್ಚಿದಳು ಯೋಗದಲಿ ೧೭

ಅರಸ ಕೇಳ್ ಮುನಿಯಿತ್ತ ಮಂತ್ರಾ
ಕ್ಷರದ ಕರಹಕೆ ತಳುವಿದರೆ ದಿನ
ಕರನ ತೇಜವ ಕೊಂಬನೇ ದೂರ್ವಾಸ ವಿಗಡನಲ
ಧರೆಗೆ ಬಂದನು ಸೂರ್ಯನಾತನ
ಕಿರಣ ಲಹರಿಯ ಹೊಯ್ಲಿನಲಿ ಸರ
ಸಿರುಹಮುಖಿ ಬೆಚ್ಚಿದಳು ಬಿಜಯಂಗೈಯಿ ನೀವೆನುತ ೧೮

ಎನ್ನಬಾರದಲೇ ಋಷಿಪ್ರತಿ
ಪನ್ನ ಮಂತ್ರವಮೋಘವದರಿಂ
ದೆನ್ನ ತೂಕದ ಮಗನಹನು ನೀನಂಜಬೇಡೆನುತ
ಕನ್ನಿಕೆಯ ಮುಟ್ಟಿದನು ಮುನ್ನಿನ
ಕನ್ನೆತನ ಕೆಡದಿರಲಿಯೆನುತವೆ
ತನ್ನ ರಥವಿದ್ದೆಡೆಗೆ ರವಿ ತಿರುಗಿದನು ವಹಿಲದಲಿ ೧೯

ಅರಸ ಕೇಳ್ ಆಶ್ಚರ್ಯವನು ತಾ
ವರೆಯ ಮಿತ್ರನ ಕರಗಿ ಕರುವಿನೊ
ಳೆರೆದರೆಂದೆನೆ ಥಳಥಳಿಸಿ ತೊಳಗುವ ತನುಚ್ಛವಿಯ
ಕುರುಳುದಲೆ ನಿಟ್ಟೆಸಳುಗಂಗಳ
ಚರಣ ಕರಪಲ್ಲವದ ಕೆಂಪಿನ
ವರಕುಮಾರನ ಕಂಡು ಬೆರಗಿನೊಳಿರ್ದಳಾ ಕುಂತಿ ೨೦

ಅಳುವ ಶಿಶುವನು ತೆಗೆದು ತೆಕ್ಕೆಯ
ಪುಳಕ ಜಲದಲಿ ನಾದಿ ಹರುಷದ
ಬಳಿಯ ಲಜ್ಜೆಯು ಭಯದ ಹೋರಟೆಗಳುಕಿ ಹಳುವಾಗಿ
ಕುಲದ ಸಿರಿ ತಪ್ಪುವುದಲಾ ಸಾ
ಕಿಳುಹ ಬೇಕೆಂದೆನುತ ಗಂಗಾ
ಜಲದೊಳಗೆ ಹಾಯ್ಕಿದಳು ಜನದಪವಾದ ಭೀತಿಯಲಿ ೨೧

ತಾಯೆ ಬಲ್ಲಂದದಲಿ ಕಂದನ
ಕಾಯಿ ಮೇಣ್ ಕೊಲ್ಲೆನುತ ಕಮಲ ದ
ಳಾಯತಾಕ್ಷಿ ಕುಮಾರಕನ ಹಾಯ್ಕಿದಳು ಮಡುವಿನಲಿ
ರಾಯ ಕೇಳೈ ಸಕಲ ಲೋಕದ
ತಾಯಲಾ ಜಾಹ್ನವಿ ತರಂಗದಿ
ನೋಯಲೀಯದೆ ಮುಳಗಲೀಯದೆ ಚಾಚಿದಳು ತಡಿಗೆ ೨೨

ಕೆದರಿ ಕಾಲಲಿ ಮಳಲ ರಾಶಿಯ
ನೊದೆದು ಕೈಗಳ ಕೊಡಹಿ ಭೋಯೆಂ
ದೊದರುತಿರ್ದನು ಶಿಶುಗಳರಸನು ರವಿಯನೀಕ್ಷಿಸುತ
ಇದನು ಕಂಡನು ಸೂತನೊಬ್ಬನು
ಮುದದ ಮದದಲಿ ತನ್ನ ಮರೆದು
ಬ್ಬಿದನಿದೆತ್ತಣ ನಿಧಿಯೊ ಶಿವಶಿವಯೆಂದು ನಡೆತಂದ ೨೩

ತರಣಿಬಿಂಬದ ಮರಿಯೊ ಕೌಸ್ತುಭ
ವರಮಣಿಯ ಖಂಡದ ಕಣಿಯೊ ಮ
ರ್ತ್ಯರಿಗೆ ಮಗನಿವನಲ್ಲ ಮಾಯಾ ಬಾಲಕನೊ ಮೇಣು
ಇರಿಸಿ ಹೋದವಳಾವಳೋ ಶಿಶು
ವರನ ತಾಯ್ ನಿರ್ಮೋಹೆಯೈ ಹರ
ಹರ ಮಹಾದೇವೆನುತ ತೆಗೆದಪ್ಪಿದನು ಬಾಲಕನ ೨೪

ತೃಣವಲಾ ತ್ರೈಲೋಕ್ಯ ರಾಜ್ಯವ
ಗಣಿಸುವೆನೆ ತಾನಿನ್ನು ತನ್ನಲಿ
ಋಣವಿಶೇಷವಿದೇನೋ ಮೇಣ್ ಈ ಬಾಲಕಂಗೆನುತ
ಕ್ಷಣದೊಳೊದಗುವ ಬಾಷ್ಪ ಲುಳಿತೇ
ಕ್ಷಣನು ಬಂದನು ಮನೆಗೆ ಪರುಷದ
ಕಣಿಯ ತಂದೆನು ರಮಣಿ ಕೊಳ್ಳೆಂದಿತ್ತನರ್ಭಕನ ೨೫

ಆದರಿಸಿದನು ರಾಧೆಯಲಿ ಮಗ
ನಾದನೆಂದುತ್ಸವವ ಮಾಡಿ ಮ
ಹೀ ದಿವಿಜರನು ದಾನ ಮಾನಂಗಳಲಿ ಸತ್ಕರಿಸಿ
ಆ ದಿನಂ ಮೊದಲಾಗಿ ಉದ್ಭವ
ವಾದುದವನೈಶ್ವರ್ಯ ಉನ್ನತ
ವಾದನಾ ರವಿನಂದನನು ರಾಧೇಯ ನಾಮದಲಿ ೨೬

ಹೊಳೆ ಹೊಳೆದು ಹೊಡಮರಳಿ ನಡು ಹೊ
ಸ್ತಿಲಲಿ ಮಂಡಿಸಿ ಬೀದಿ ಬೀದಿಗ
ಳೊಳಗೆ ಸುಳಿವರ ಸನ್ನೆಯಲಿ ಕರೆಕರೆದು ನಸುನಗುತ
ಲಲಿತರತ್ನದ ಬಾಲದೊಡಿಗೆಯು
ಕಳಚಿ ಹಾಯ್ಕುವ ಹೆಸರು ಜಗದಲಿ
ಬೆಳೆವುತಿರ್ದುದು ಹಬ್ಬಿದುದು ಜನಜನದ ಕರ್ಣದಲಿ ೨೭

ಅರಸ ಕೇಳೈ ಕರ್ಣ ಪಾರಂ
ಪರೆಯೊಳೀತನ ಹೆಸರು ಜಗದಲಿ
ಹರಿದುದಲ್ಲಿಂ ಬಳಿಕಲೀತನ ನಾಮಕರಣದಲಿ
,ಸುರನರೋರಗ ನಿಕರವೇ ವಿ
ಸ್ತರಿಸಿದುದು ಕರ್ಣಾಭಿಧಾನವ
ಗುರುಪರಾಕ್ರಮಿ ಬೆಳೆವುತಿರ್ದನು ಸೂತಭವನದಲಿ ೨೮

ನಾಲ್ಕನೆಯ ಸಂಧಿ

ಸೂ. ಭರತ ವಂಶದೊಳೈದು ಮಿಗೆ ನೂ
ರ್ವರು ಕುಮಾರರು ಪಾಂಡು ಧೃತರಾ
ಷ್ಟ್ರರಿಗೆ ಜನಿಸಿದರಮಲ ಮುನಿ ಮಂತ್ರೋಪದೇಶದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಕುಂತೀಭೋಜ ಭೂಪತಿ
ಯಾಲಯದೊಳೀ ಕುಂತಿ ಮೆರೆದಳು ವಿವಿಧ ವಿಭವದಲಿ
ಕೇಳಿದನು ಗಾಂಗೇಯನಾ ನೀ
ಲಾಳಕಿಯ ಕುಲ ರೂಪು ಲಕ್ಷಣ
ಶೀಲವನು ಪಾಂಡುವಿಗೆ ಪಾಸಟಿಯೆಂದು ರಾಗದಲಿ ೧

ಕರೆಸಿ ಕುಂತೀಭೋಜನನು ಸ
ತ್ಕರಿಸಿ ಕುಂತಿಯ ಪಾಂಡುವಿಗೆ ಭೂ
ಸುರರ ಮತದಿಂದಗ್ನಿ ಸಾಕ್ಷಿಕ ವರವಿವಾಹವನು
ಪರಮ ವಿಭವದಲೆಸಗಿ ಮದ್ರೇ
ಶ್ವರನನುಜೆ ಮಾದ್ರಿಯನು ಪಾಂಡುವಿ
ಗರಸಿಯನು ಮಾಡಿದನು ವೈವಾಹಿಕ ಮುಹೂರ್ತದಲಿ ೨

ವರ ವಿವಾಹ ಮುಹೂರ್ತ ಸಮನಂ
ತರ ಸುಲಗ್ನದೊಳಖಿಳ ರಾಜ್ಯದ
ಧುರದ ನಿರ್ವಾಹಕ ಮಹಾಪಟ್ಟಾಭಿಷೇಚನವ
ಸುರನದೀಸುತ ಪಾಂಡುವಿಗೆ ವಿ
ಸ್ತರಿಸಿದನು ಧೃತರಾಷ್ಟ್ರ ವಿದುರರ
ಪರಮ ಪರಿತೋಷಾನುಮತದಲಿ ಮೆರೆದುದಾ ವಿಭವ ೩

ಸೋಮಕುಲದವರಲಿ ಭವತ್ ಪ್ರಪಿ
ತಾಮಹನವೊಲ್ ಧರ್ಮದಲಿ ಸಂ
ಗ್ರಾಮದಲಿ ಸತ್ಯದಲಿ ಸಾಹಿತ್ಯದಲಿ ವಿನಯದಲಿ
ಸಾಮದಲಿ ಶೌರ್ಯದಲಿ ಸುಜನ
ಪ್ರೇಮದಲಿ ನೀತಿಯಲಿ ದೃಢದಲಿ
ಭೂಮಿಯಲಿ ನಾ ಕಾಣೆನವನೀಪಾಲ ಕೇಳೆಂದ ೪

ಪಸರಿಸಿದ ಪರಿಧೌತಕೀರ್ತಿ
ಪ್ರಸರದಲಿ ಬೆಳುಪಾಯ್ತು ಜಗ ನಿ
ಪ್ಪಸರದಲಿ ಝಳಪಿಸುವ ಖಂಡೆಯ ಸಿರಿಯ ಸೊಂಪಿನಲಿ
ಮುಸುಗಿತಗ್ಗದ ಕೆಂಪು ಪರಬಲ
ವಿಸರ ದಳನ ಕ್ರೋಧಮಯ ತಾ
ಮಸದಿನಸಿತಾಭಾಸಮಾದುದು ಭುವನವಿಸ್ತಾರ ೫

ಓಲಗಿಸುವುದು ಮಿತ್ರ ರಾಯರ
ಮೌಳಿಮಣಿ ಪಾಂಡುವಿನ ಚರಣ ನ
ಖಾಳಿಯನು ಸೆಣಸುವ ಮಹೀಶ್ವರ ಮೌಳಿ ಮಣಿಕಿರಣ
ಓಲಗಿಸಿತು ಪ್ರಣಯದಮರೀ
ಬಾಲೆಯರ ಪದನಖವನದನೇ
ವೇಳುವೆನು ಪಾಂಡುವಿನ ಖಂಡೆಯ ಸಿರಿಯ ಸಡಗರವ ೬

ಓಲಗಿಸಿ ಕೊಂಬಾತನಂಥ ನೃ
ಪಾಲನುಳಿದಂತಖಿಳ ಧರಣೀ
ಪಾಲಕತ್ವವ ಪಾಂಡುಭೂಪತಿಗೀ ಕುಮಾರಕರ
ಲಾಲಿಸುವ ಕುಲನೀತಿ ವಿಧದಲಿ
ಪಾಲಿಸುವ ಭರ ಭೀಷ್ಮನದು ಸಂ
ಬಾಳಿಸಿತು ನಳ ನಹುಷಚರಿತವನಿವರ ಪರಿಪಾಟಿ ೭

ನೃಪ ಪರಂಪರೆಯಿಂದ ಬಂದೀ
ವಿಪುಳ ವಂಶಸ್ಥಿತಿ ವಿಸರ್ಗವ
ನಪಹರಿಸಿದನು ಹಿಂದೆ ವೇದವ್ಯಾಸಮುನಿ ಬಂದು
ಕೃಪೆಯ ಮಾಡನೆ ತನ್ನ ಸಂತತಿ
ಕೃಪಣವಾಯ್ತೆಂದನವರತ ಕುರು
ನೃಪತಿ ಚಿಂತಾಭಾರದಲಿ ಬಳಲುವನು ಧೃತರಾಷ್ಟ್ರ ೮

ಅರಸ ಚಿತ್ತೈಸೊಂದು ದಿನ ಮುನಿ
ವರನು ಬಿಜಯಂಗೈದು ಹಸ್ತಿನ
ಪುರವ ಹೊಕ್ಕನು ರಾಜಭವನಕೆ ಬಂದು ಹರ್ಷದಲಿ
ಸುರನದೀತನುಜಾದಿಗಳ ಸ
ತ್ಕರುಣೆಯನು ಕೈಕೊಂಡು ಮಕ್ಕಳ
ಮುರಿದ ವಿಭವಕೆ ಮೈಯನಾಂತು ಮುನೀಂದ್ರನಿಂತೆಂದ ೯

ಭರತಕುಲದಲಿ ಮಕ್ಕಳಿಲ್ಲದ
ಕೊರತೆ ಕೋಮಲ ಸೌಖ್ಯಲತೆಗಿದು
ಕರಗಸವಲಾ ತಂದೆ ಬಾ ಧೃತರಾಷ್ಟ್ರ ಬಾಯೆನುತ
ಕರೆದು ಕಟ್ಟೇಕಾಂತದಲಿ ನಿ
ನ್ನರಸಿಗನುಪಮ ಪುತ್ರ ಶತವವ
ತರಿಸುವುದು ಕೊಳ್ಳೆಂದು ಕೊಟ್ಟನು ಮಂತ್ರ ಪಿಂಡಕವ ೧೦

ಧರಿಸಿದಳು ಗಾಂಧಾರಿ ಗರ್ಭೋ
ತ್ಕರವನಿತ್ತ ನಿಜಾಶ್ರಮಕೆ ಮುನಿ
ತಿರುಗಿದನು ದಿನದಿನದೊಳುಬ್ಬಿತು ರಾಯನಭ್ಯುದಯ
ಅರಸ ಕೇಳೈ ಬೇಂಟೆಗಾರರು
ಕರೆಯ ಬಂದರು ಮೃಗನಿಕಾಯದ
ನೆರವಿಗಳ ನೆಲೆಗೊಳಿಸಿ ಪಾಂಡು ನೃಪಾಲನೋಲಗಕೆ ೧೧

ಕೇಳಿದನು ಮೃಗದಿಕ್ಕೆ ಹಕ್ಕೆಯು
ಗಾಳಿಯನು ಕೊಂಬುಗಳನಾಗಳೆ
ಬೀಳು ಕೊಟ್ಟನು ರಾಜಸಭೆಯನು ರಾಯನುಚಿತದಲಿ
ಬೋಳೆ ಕವಲಂಬುಗಳ ಹದವಿಲು
ತಾಳಿಕೆಯ ಕುಪ್ಪಸದ ಬೇಂಟೆಯು
ಮೇಳದಲಿ ಭೂಪಾಲ ಹೊರವಂಟನು ನಿಜಾಲಯವ ೧೨

ಏನನೆಂಬೆನು ನಿಮ್ಮನು ಪಿತಾ
ಚೋನ್ನೃಪಾಲಕರೆಂಬವೋಲ್ ವ್ಯಸ
ನಾನುಬಂಧದ ಬೇಗೆ ಕೊಂಡೊಯ್ದುದು ಮಹೀಪತಿಯ
ಕಾನನದೊಳಾಯತದ ಶರ ಸಂ
ಧಾನ ಕಲಿತ ಶರಾಸನನು ಮೃಗ
ಹಾನಿಗಳ ಹೆಕ್ಕಳದೊಳೋಲಾಡಿದನು ಬೇಂಟೆಯಲಿ ೧೩

ಬಂದುದಾ ಪಾಂಡುವಿಗೆ ನಿನ್ನಯ
ತಂದೆಗಾದ ವಿಪತ್ತಿನಂದದ
ಲೊಂದು ಠಾವಿನಲೊಬ್ಬ ಮುನಿ ಮೃಗ ಮಿಥುನ ರೂಪಿನಲಿ
ನಿಂದು ರಮಿಸುತ್ತಿರೆ ಮೃಗದ್ವಯ
ವೆಂದು ಹೂಡಿದನಂಬನಿಬ್ಬರಿ
ಗೊಂದು ಶರದಲಿ ಕೀಲಿಸಿದಡೊರಲಿದರು ನರರಾಗಿ ೧೪

ಹಾ ಮಹಾದೇವಯೆನುತ್ತೆ ಸ
ನಾಮಮುನಿ ತೆತ್ತಿಸಿದ ಬೆನ್ನಿನ
ತೋಮರದ ಮರುಮೊನೆಯ ಕಿಬ್ಬಸುರಿನ ನಿಜಾಂಗನೆಯ
ಕಾಮಿನಿಯೆ ಕಡುನೊಂದೆಲಾಮುಖ
ತಾಮರಸವನು ತೋರು ತೋರೆನು
ತಾ ಮುನೀಶ್ವರನಪ್ಪಿ ಮುಂಡಾಡಿದನು ನಿಜಸತಿಯ ೧೫

ಕಾತರಿಪ ಮುನಿಮಿಥುನವನು ನಿ
ನ್ನಾತ ಕಂಡನು ಬಿಲ್ಲಕೊಪ್ಪಿನ
ಲಾತ ಕದಪಿನ ಮಕುಟದೊಲವಿನ ಬೆರಳ ಬಿರುದನಿಯ
ಬೀತ ಸೊಂಪಿನ ತಳಿತ ಬೆರಗಿನ
ಪಾತಕದ ಪರುಠವದ ಮುಖದ ಮ
ಹೀತಳಾಧಿಪ ಸುಯ್ದು ನೊಂದನು ಶಿವಶಿವಾಯೆನುತ ೧೬

ಅರಿಯೆ ನಾನಿವರೆಂದು ಮೃಗವೆಂ
ದಿರಿದೊಡಿದು ಮತ್ತೊಂದು ಪರಿಯಾ
ಯ್ತುರುವ ಮಾಣಿಕವೆಂದು ಕೊಂಡಡೆ ಕೆಂಡವಾದುದಲ
ಸರವಿಯೇ ಹಾವಾದುದೇನೆಂ
ದರಿಯೆನೀ ಕೌತುಕವನುರೆ ಮೈ
ಮರೆಸಿ ಕೊಂದುದೆ ವಿಧಿಯೆನುತ ಹರಿತಂದನಾ ಸ್ಥಳಕೆ ೧೭

ಉಗಿದು ಬಿಸುಟನು ಸರಳ ಮುಗ್ಗುಲ
ಮುಗುಚಿ ನೆತ್ತರ ಹೊನಲಿನೀಚೆಗೆ
ತೆಗೆದು ತೊಳೆತೊಳೆದೊರಸಿದನು ಸಗ್ಗಳೆಯ ನೀರಿನಲಿ
ಮೃಗವಹರೆ ಮಾನಿಸರಕಟ ಪಾ
ಪಿಗಳಿಗೆತ್ತಣ ತಪವಿದೆತ್ತಣ
ಮೃಗ ವಿನೋದಕ್ರೀಡೆ ಕೊಂದಿರೆನುತ್ತ ಬಿಸುಸುಯ್ದು ೧೮

ಮತ್ತೆ ನಾವೇ ಪಾಪಿಗಳೆ ನೀ
ನುತ್ತಮನಲಾ ಸಾಕಿದೇತಕೆ
ನುತ್ತ ಮರಳುವ ಕಂಗಳಡಿಗಡಿಗುಗಿವ ಮೇಲುಸುರ
ಎತ್ತಿ ಹಾಯ್ಕುವ ಕೊರಳ ಬಿಕ್ಕುಳ
ತೆತ್ತುವಧರದ ರೋಷದಲಿ ಹೊಗೆ
ಸುತ್ತಿದುರಿವಾತುಗಳ ಸೂಸಿದರವನಿಪನ ಮೇಲೆ ೧೯

ಎಲವೊ ರಾಜಬ್ರುವನೆ ತನ್ನಯ
ಲಲನೆಯೊಡನಿರೆ ಕೊಂದೆ ನಿನ್ನಯ
ಲಲನೆಯನು ನೀ ಕೂಡಿದಾಗಲೆ ಮರಣ ನಿನಗಹುದು
ಹಲವು ಮಾತೇಕೆನುತ ಹರಣವ
ಕಳೆದುದಾ ಮುನಿ ಮಿಥುನವವನಿಪ
ತಿಲಕ ದುಮ್ಮಾನದಲಿ ಬಂದನು ಹಸ್ತಿನಾಪುರಕೆ ೨೦

ಆದ ಹದನನು ಭೀಷ್ಮ ಧೃತರಾ
ಷ್ಟ್ರಾದಿಗಳಿಗರುಹಿದರೆ ಹಯ ಮೇ
ಧಾದಿ ಯಜ್ಞದಲೀ ಮಹಾ ಪಾತಕ ವಿಘಾತಕವ
ವೈದಿಕೋಕ್ತಿಯ ಮಂತ್ರದಲಿ ಸಂ
ಪಾದಿಸುವೆವೆನೆ ಶಿರವ ಬಿದುರಿ ಮ
ಹಾ ದುರಾಗ್ರಹ ಬುದ್ಧಿಯಲಿ ಹೊರವಂಟನರಮನೆಯ ೨೧

ಸಕಲ ಭಂಡಾರವನು ಭೂಸುರ
ನಿಕರದಲಿ ಚೆಲ್ಲಿದನು ಸುಜನ
ಪ್ರಕರವನು ಗಾಂಗೇಯ ಧೃತರಾಷ್ಟ್ರರಿಗೆ ಕೈಗೊಳಿಸಿ
ಚಕಿತ ಚಿತ್ತನು ಮುನಿಹತಿಯ ಪಾ
ತಕದ ನೆತ್ತಿಯ ಸಬಳವಾವುದೊ
ಸಕಲ ಯೋಗಾವಳಿಯೊಳೆನುತೈದಿದನು ಕಾನನವ ೨೨

ಅರಸ ಕೇಳ್ ಶತಶೃಂಗ ಶೈಲದ
ವರತಪೋಧನರಾಶ್ರಮಕೆ ನಿ
ಮ್ಮರಸ ಬಂದನು ವಂದಿಸಿದನಾ ಪರಮ ಮುನಿವರರ
ಹರುಷದಲಿ ಜಾಬಾಲಿ ಗಾರ್ಗ್ಯಾಂ
ಗಿರಸ ಗಾಲವ ಗೌತಮಾದ್ಯರು
ಧರಣಿಪನ ಸಂಭಾವಿಸಿದರರ್ಘ್ಯಾಸನಾದಿಯಲಿ ೨೩

ಈತನಮಲಾಷ್ಟಾಂಗಯೋಗ ವಿ
ಧೂತ ಕಿಲ್ಬಿಷನಾ ಬಳಿಕ ಮ
ಹಾತಪಸ್ವಿಗಳೊಳಗೆ ಸಂದನು ತೀವ್ರ ತೇಜದಲಿ
ಆ ತಪೋನಿಷ್ಠಂಗೆ ತಾವತಿ
ಭೀತಿ ಭಕ್ತಿಯೊಳಧಿಕ ಶುಶ್ರೂ
ಷಾತಿಶಯದಲಿ ಮನವ ಹಿಡಿದರು ಕುಂತಿ ಮಾದ್ರಿಯರು ೨೪

ಪರಮ ವೈರಾಗ್ಯದಲಿ ನಿರಂತಃ
ಕರಣ ನಿರುಪಮ ಭಾವ ಶುದ್ಧಿಯ
ಮುರಹರ ಧ್ಯಾನೈಕ ಪೀಯೂಷಾಭಿಷೇಕದಲಿ
ಹೊರೆದು ಹೊಂಗಿದ ನಿಷ್ಪ್ರಪಂಚೋ
ತ್ಕರದ ಸಂಖುದುನ್ನತಿಯಲಿದ್ದನು
ಧರಣಿಪತಿ ಮುನಿಪನ ಮಹಾಪಾತಕವ ಕೆಡೆಯೊದೆದು ೨೫

ನಾರಿಯರು ಮರುಗಿದರಕಟ ಮುದಿ
ಹಾರುವನ ತನಿಬೇಂಟೆ ನಮ್ಮಯ
ಬೇರುಗೊಲೆಯಾಗಿರ್ದುದೇ ಹಾಯೆನುತ ಬಿಸುಸುಯ್ದು
ವಾರಿಜಾನನೆ ಕುಂತಿ ಮೆಲ್ಲನೆ
ಸಾರಿದಳು ನಯದಲಿ ರಹಸ್ಯದ
ಲಾರುವರಿಯದವೋಲು ಬಿನ್ನಹ ಮಾಡಿದಳು ಪತಿಗೆ ೨೬

ಭರತ ವಂಶಕೆ ಪುತ್ರ ಶತವವ
ತರಿಸುವುದು ಗಾಂಧಾರಿ ದೇವಿಗೆ
ವರ ಮುನೀಶ್ವರನಿತ್ತ ವರವದು ನಿಮ್ಮಡಿಗಳರಿಯೆ
ದುರುಳ ಮುನಿಪನ ಶಾಪವೇ ಸ್ತ್ರೀ
ಪುರುಷ ಸಂಗ ವಿರೋಧ ನಮಗಿ
ನ್ನರಸ ನಾಪುತ್ರಸ್ಯಗತಿಯೆಂದಿರದೆ ಶ್ರುತಿವಚನ ೨೭

ಧರೆಯ ರಾಜ್ಯಸ್ಥಿತಿಗೆ ಸುತರವ
ತರಿಸುವರು ಗಾಂಧಾರಿಗಾ ಪು
ತ್ರರಿಗೆ ಸುತರಾ ಸುತರ ಸುತರಾ ಸುತರ ಸೂನುಗಳು
ಧರೆ ಪರಂಪರೆಯಿಂದಲತ್ತಲೆ
ಸರಿವುದೀ ನಿಮ್ಮಡಿಗೆ ದರ್ಭಾ
ಸ್ತರಣ ಸಮಿಧಾಧಾನವೇ ಕಡೆಗೆಂದಳಾ ಕುಂತಿ ೨೮

ವನಜಮುಖಿ ಕೇಳ್ ಪುತ್ರಮುಖ ದ
ರ್ಶನವು ಸುಲಭವೆ ಪುಣ್ಯಹೀನರಿ
ಗೆನಿತು ಹಲುಬಿದರೇನು ಹಂಗಿಗರಾವು ದುಷ್ಕೃತಿಗೆ
ಮುನಿಯ ಬೇಟದ ಬೇಳುವೆಯ ಮಾ
ತಿನ ಹವಣ ನೀ ಬಲ್ಲೆ ಹೇಳಿ
ನ್ನೆನಗೆ ಕರ್ತವ್ಯವನು ಮಾನಿನಿ ಭೀತಿ ಬೇಡೆಂದ ೨೯

ನಾರಿಯರು ಮತ್ತಲ್ಲಿ ರಾಜ ಕು
ಮಾರಿಯರು ಛಲವಾದಿಗಳು ಗಾಂ
ಧಾರಿಗಾದುದು ಪುತ್ರಸಂತತಿಯೆಂಬ ಭೇದದಲಿ
ಧೀರ ಬಿನ್ನವಿಸಿದೆನು ಕಾರ್ಯದ
ಭಾರವನು ನೀ ಬಲ್ಲೆಯಿವಳು ವಿ
ಕಾರಿಯೆನ್ನದಿರೆಂದು ರಾಯನ ಚರಣಕೆರಗಿದಳು ೩೦

ಲೋಲಲೋಚನೆ ದೃಢ ಪತಿವ್ರತೆ
ಯೇಳು ದುಃಖಿಸಬೇಡ ಭೃಗು ಜಾ
ಬಾಲಿ ಜಮದಗ್ನ್ಯಾದಿ ದಿವ್ಯ ಮುನೀಂದ್ರ ಗಣವಿದೆಲ
ಓಲಗಿಸುವುದು ದುಷ್ಕೃತಿಗೆ ನಿ
ಷ್ಪಾಳೆಯವು ಬಳಿಕಹುದು ಮಂತ್ರ ವಿ
ಶಾಲ ಬೀಜದಿಯಹುದು ಸಂತತಿ ಕಾಂತೆ ಕೇಳೆಂದ ೩೧

ಭವದನುಗ್ರಹದಿಂದ ಸುತರು
ದ್ಭವಿಸಿದರೆ ಲೇಸನ್ಯಥಾ ಸಂ
ಭವಿಸಿದರೆ ದುಷ್ಕೀರ್ತಿವಧುವೆಂಜಲಿಸಳೇ ಕುಲವ
ಅವನಿಪತಿ ಕೇಳ್ ನಹುಷ ನಳ ಪೌ
ರವ ಸುಹೋತ್ರಾದ್ಯರ ನಿಜಾತ್ಮೋ
ದ್ಭವರ ಪಾರಂಪರೆಗೆ ಗತಿಯೇನೆಂದಳಾ ಕುಂತಿ ೩೨

ಅರಸಿ ಕೇಳ್ ತದ್ಬೀಜ ಪಾರಂ
ಪರೆ ಮುರಿಯೆ ತತ್ ಕ್ಷೇತ್ರದಲಿ ಮುನಿ
ವರರ ಕಾರುಣ್ಯದಲಿ ಪುತ್ರೋದ್ಭವವದೇ ವಿಹಿತ
ಪರಮ ವೈದಿಕ ಸಿದ್ಧವಿದು ಸರ
ಸಿರುಹಮುಖಿ ನಿಶ್ಶಂಕೆಯಲಿ ನೀ
ಧರಿಸು ಮುನಿ ಮಂತ್ರೋಪದೇಶವನಿದುವೆ ನಿರ್ದೋಷ ೩೩

ಆದಡವನಿಪ ಬಿನ್ನಹವು ತನ
ಗಾದಿಯಲಿ ದೂರ್ವಾಸಮುನಿ ಕರು
ಣೋದಯದಲಿತ್ತೈದು ಮಂತ್ರಾಕ್ಷರದ ವರವುಂಟು
ನೀ ದಯಾಂಬುಧಿ ನಿನ್ನನುಗ್ರಹ
ವಾದುದಾದರೆ ತದ್ವಿಧಾನದ
ಲಾದರಿಸುವೆನು ಪುತ್ರ ಕಾಮ್ಯವನೆಂದಳಾ ಕುಂತಿ ೩೪

ಲೇಸನಾಡಿದೆ ಕುಂತಿ ಮುನಿಯುಪ
ದೇಶಿಸಿದನೇ ನಮ್ಮ ಭಾಗ್ಯವಿ
ದೈಸಲೇ ನೀ ದೃಢಪತಿವ್ರತೆಯೆನ್ನನುಜ್ಞೆಯಲಿ
ಭಾಸುರರ ನೀ ಭರತವಂಶ ವಿ
ಲಾಸರನು ಕೃತ ಶತ್ರು ಪಕ್ಷ ವಿ
ನಾಶರನು ಬೆಸಲಾಗು ಹೋಗೆನ್ನಾಣೆ ಹೋಗೆಂದ ೩೫

ತರುಣಿ ಪಾಂಡುವಿನಾಜ್ಞೆಯನು ನಿಜ
ಶಿರದೊಳಾಂತು ಸಮಸ್ತ ಮುನಿ ಮು
ಖ್ಯರಿಗೆ ವಂದಿಸಿ ಹರಿ ಹರ ಬ್ರಹ್ಮಾದಿಗಳಿಗೆರಗಿ
ಸರಸಿಯಲಿ ಮಿಂದಳು ಮುನೀಂದ್ರನ
ಪರಮ ಮಂತ್ರಾಕ್ಷರವ ತಾನು
ಚ್ಚರಿಸಿ ನೆನೆದಳು ಯಮುನನಾಕ್ಷಣವಾತನೈತಂದ ೩೬

ಸತಿಯ ಸಮ್ಮುಖನಾಗಿ ವೈವ
ಸ್ವತನು ನುಡಿದನಿದೇಕೆ ನಮ್ಮ
ಕ್ಷಿತಿಗೆ ಬರಿಸಿದೆಯೆನಲು ಲಜ್ಜಾವನತಮುಖಿಯಾಗಿ
ಸುತನ ಕರುಣಿಪುದೆನಲು ಭಯ ಪರಿ
ವಿತತ ವಿಮಲ ಸ್ವೇದಜಲ ಕಂ
ಪಿತೆಯ ಮುಟ್ಟಿ ತಥಾಸ್ತುವೆನುತ ಕೃತಾಂತ ಬೀಳ್ಕೊಂಡ ೩೭

ಧಾರುಣೀಪತಿ ಕೇಳು ಕುಂತೀ
ನಾರಿಗಾದುದು ಗರ್ಭ ಹರುಷದ
ಭಾರದಲಿ ಸತಿ ತಗ್ಗಿದಳು ನವ ಪೂರ್ಣಮಾಸದಲಿ
ಚಾರುತರ ನಕ್ಷತ್ರ ಶುಭದಿನ
ವಾರ ಲಗ್ನದೊಳಿಂದುಕುಲ ವಿ
ಸ್ತಾರಕನು ಸುಕುಮಾರನವತರಿಸಿದನು ಧರಣಿಯಲಿ ೩೮

ನಿರ್ಮಲಿನವಾಯ್ತಖಿಲ ದೆಸೆ ದು
ಷ್ಕರ್ಮತತಿ ಬೆಚ್ಚಿದುದು ಸಾಕ್ಷಾತ್
ಧರ್ಮವೇ ಧರಣಿಯಲಿ ನೃಪ ರೂಪಾಗಿ ಜನಿಸಿತಲ
ದುರ್ಮಹೀಶರ ಹೊತ್ತ ಭಾರದ
ಕರ್ಮ ವೇದನೆ ಧಾತ್ರಿಗಿಳಿದುದು
ಧರ್ಮವಿನ್ನೆಮಗಹುದೆನುತ ಹೆಚ್ಚಿದುದು ಮುನಿನಿಕರ ೩೯

ಧರಣಿಪತಿ ಧರ್ಮಜನ ಮುಖ ಸಂ
ದರುಶನವ ಮಾಡಿದನು ಹೆಚ್ಚಿದ
ಹರುಷ ಭಾರಕೆ ಚಿತ್ತ ತಗ್ಗಿತು ಮುಗ್ಗಿತಡಿಗಡಿಗೆ
ಹರಿದು ಪುತ್ರೋತ್ಸವದ ನುಡಿ ಗಜ
ಪುರದೊಳಬ್ಬರವಾಯ್ತು ಪಾಂಡುವಿ
ನರಸಿಯಲಿ ಸಂತಾನ ಜನಿಸಿದುದೆಂದು ಜನಜನಿತ ೪೦

ಕೇಳಿದಳು ಗಾಂಧಾರಿ ಕುಂತಿಗೆ
ಬಾಲ ಕೇಳಿ ವಿನೋದವೇ ಕೈ
ಮೇಳವಿಸಿತೇ ಮುನ್ನ ಹಾ ತಪ್ಪೇನು ತಪ್ಪೇನು
ಕಾಳು ಮಾಡಿದನೆನಗೆ ಮುನಿಪತಿ
ಠೌಳಿಕಾರನಲಾ ಸುಡೀ ಗ
ರ್ಭಾಳಿಗಳನೆಂದಬಲೆ ಹೊಸೆದಳು ಬಸುರನೊಡೆಮುರಿದು ೪೧

ಉದುರಿದವು ಧರಣಿಯಲಿ ಬಲು ಮಾಂ
ಸದ ಸುರಕ್ತದ ಘಟ್ಟಿಗಳು ಖಂ
ಡದ ಸುಧಾಳದ ಜಗಿಯ ಪೇಸಿಕೆ ನಿಕರ ನೂರೊಂದು
ಕೆದರಿದಳು ವಾಮಾಂಘ್ರಿಯಲಿ ನೂ
ಕಿದಳು ಹಾಯ್ಕಿವ ಹೊರಗೆನುತ ನೋ
ಡಿದಳು ಕರೆ ಕೈನೆಯರನೆನುತ ಕಠೋರ ಕೋಪದಲಿ ೪೨

ತನ ತನಗೆ ನಡು ನಡುಗಿ ಕಾಂತಾ
ಜನವು ಬಂದುದು ತಾಯೆ ಬೆಸನೇ
ನೆನಲು ಬಿಸುಡಿಪನೂರ ಹೊರಗೆಂಬಾ ಮುಹೂರ್ತದಲಿ
ಮುನಿಪ ವೇದವ್ಯಾಸನಾಕೆಯ
ಮನೆಗೆ ಬಂದನು ಕಂಡನೀ ಕಾ
ಮಿನಿಯ ಕೋಲಾಹಲವಿದೇನೇನೆಂದು ಬೆಸಗೊಂಡ ೪೩

ಭರತ ಸಂತಾನಕೆ ಕುಮಾರರ
ಹೆರುವೆ ನಾ ಮುನ್ನೆಂದು ಗರ್ಭವ
ಧರಿಸಿದೆನು ನಿಮ್ಮಡಿಯ ಕೃಪೆಯಲಿ ಮಂತ್ರ ಭಾವಿತವ
ವರುಷವೆರಡಾಯ್ತಿದರ ಭಾರವ
ಧರಿಸಿದೆನು ದಾಯಾದ್ಯರೊಳಗವ
ತರಿಸಿದನು ಮಗನೆನುತ ಮುಖದಿರುಹಿದಳು ಗಾಂಧಾರಿ ೪೪

ಮರುಳ ಹೆಂಗುಸಲಾ ಮಹಾತ್ಮರ
ಪರಿಯ ನೀನೆಂತರಿವೆ ಗರ್ಭೋ
ತ್ಕರವ ಕೆಡಿಸಿದೆ ಪಾಪಿ ನೀ ಸಾರೆನುತ ಮುನಿ ಮುಳಿದು
ತರಿಸಿದನು ಘೃತಪೂರಿತದ ಕೊ
ಪ್ಪರಿಗೆಗಳನೊಂದೊಂದನೊಂದರೊ
ಳಿರಿಸಿ ಮಂತ್ರಿಸಿ ನೀರ ತಳಿದನು ರಕ್ಷೆಗಳ ರಚಿಸಿ ೪೫

ಚಿಂತೆಯಿಲ್ಲದೆ ನೂರುದಿನ ಪರಿ
ಯಂತ ರಕ್ಷಿಸು ಬಳಿಕ ನಿನ್ನಯ
ಸಂತತಿಯ ಸಾಮರ್ಥ್ಯವನು ಗಾಂಧಾರಿ ನೋಡೆಂದು
ಕಂತುಪಿತ ಸನ್ನಿಭನು ಸತಿಯನು
ಸಂತವಿಸಿ ಮರಳಿದನು ಧರಣೀ
ಕಾಂತ ಕೇಳೈ ಬನದೊಳಿತ್ತಲು ಭೀಮನುದ್ಭವವ ೪೬

ನಿಯಮದಲಿ ಕಾಮಿನಿ ಸರೋವಾ
ರಿಯಲಿ ಮಿಂದಳು ಬೀಜಮಂತ್ರ
ವ್ಯಯವ ಮಾಡಿದಳಮರ ನಿಕರವ ನೋಡಿ ಕೈಮುಗಿದು
ಬಯಸಿದಳು ವಾಯುವನು ನಿಜ ಮೂ
ರ್ತಿಯಲಿ ಬಂದು ಸಮೀರನಾ ಕುಂ
ತಿಯನು ನುಡಿಸಿದನೆಮ್ಮ ಬರಿಸಿದ ಹದನದೇನೆಂದು ೪೭

ಬರಿಸಿದುದು ಬೇರೇನು ಸುತನನು
ಕರುಣಿಸುವುದೈಸಲೆಯೆನಲು ಸಂ
ಸ್ಪರುಶನದಿ ಭವದಿಷ್ಟಮಸ್ತುಯೆನುತಲಂಬರಕೆ
ಮರಳಿದನು ಪವಮಾನನೀ ಪಂ
ಕರುಹಮುಖಿ ಬೆಸಲಾದಳೊಂದೇ
ವರುಷ ಗರ್ಭವ ಧರಿಸಿ ಪರಬಲ ಕಾಲ ಭೈರವನ ೪೮

ಅವನಿಸುತವಾರ ತ್ರಯೋದಶಿ
ದಿವದ ಮಧ್ಯದೊಳರ್ಕನಿರೆ ಸಂ
ಭವಿಸಿದನು ಮಘೆಯಲಿ ಶುಭಗ್ರಹ ಲಗ್ನದುದಯದಲಿ
ಭವದ ಮಾತ್ರದೊಳಹಿತ ಪಾರ್ಥಿವ
ನಿವಹ ನಡುಗಿತು ಭೂಮಿಪತಿ ಹೇ
ಳುವೆನದೇನನು ಭೀಮಸೇನನ ಜನನದದ್ಭುತವ ೪೯

ಭೀಮನುದಯಿಸಿದಿರುಳು ರಾಯ ಪಿ
ತಾಮಹನು ಜನಿಸಿದನಲೈ ನಿ
ಮ್ಮಾ ಮಹಾತ್ಮನ ಹುಟ್ಟು ಬೆದರಿಸಿತಖಿಳ ಜನಮನವ
ಭೂಮಿ ನಡುಗಿತು ದೆಸೆಗೆ ಹರಿದವು
ಧೂಮಕೇತುಗಳೊದರಿದವು ಬಳಿ
ಕಾ ಮಹಾನಗರದಲಿ ಭರದಲಿ ಭೂರಿ ಗೋಮಾಯು ೫೦

ಕರೆಸಿದನು ಧೃತರಾಷ್ಟ್ರನವನೀ
ಸುರರ ಬೆಸಗೊಂಡನು ಕುಮಾರನ
ದರುಶನದ ಸಮನಂತರದಲುತ್ಪಾತ ಫಲಗತಿಯ
ಭರತವಂಶವನುಳಿದ ಭೂಮೀ
ಶ್ವರರನಂತವನೀತನೇ ಸಂ
ಹರಿಸುವನು ಸಂದೇಹವಿದಕೇನೆಂದರಾ ದ್ವಿಜರು ೫೧

ಕುಲಕೆ ಕಂಟಕನಾದಡೊಬ್ಬನ
ಕಳೆವುದೂರಳಿವಿನಲಿ ಕಳೆವುದು
ಕುಲವನೊಂದನು ದೇಶದಳಿವಿನಲೂರ ಕೆಡಿಸುವುದು
ಇಳೆಯನಖಿಳವ ಬಿಸುಡುವುದು ತ
ನ್ನುಳಿವ ಮಾಡುವುದೆಂಬ ವಚನವ
ತಿಳಿವುದೀತನ ಬಿಸುಟು ಕಳೆ ನೀನೆಂದನಾ ವಿದುರ ೫೨

ಸುತನ ಮೋಹದ ತಿಮಿರವಾ ದು
ಸ್ಥಿತಿಯನೀಕ್ಷಿಸಲೀವುದೇ ಮು
ರ್ಮತಿಯೊಳೀತನ ಬಿಸುಡಲೀಸಿದುದಿಲ್ಲ ಗಾಂಧಾರಿ
ಸುತನಿರೀಕ್ಷಣ ಜಾತಕರ್ಮೋ
ಚಿತದ ದಾನಂಗಳಲಿ ಭೂಸುರ
ತತಿಯ ದಣಿಸಿದನನಿಬರಿಗೆ ಗುಣನಾಮಕರಣದಲಿ ೫೩

ಜನಪ ದುರ್ಯೋಧನನು ದುಶ್ಶಾ
ಸನ ವಿಕರ್ಣ ಸುಬಾಹು ದುಸ್ಸಹ
ಕನಕವರ್ಣ ಸುಷೇಣ ದೀರ್ಘೋದರ ಮಹೋದರನು
ಜನವಿಜಯ ಜಲಸಂಧ ದೃಢವಾ
ಹನ ವಿವಿಂಶತಿ ಕುಂಡಧಾರಕ
ನೆನಲು ನೂರ್ವರ ನಾಮಕರಣವನರಸ ಮಾಡಿಸಿದ ೫೪

ಜನಪತಿಗೆ ಬಳಿಕೊಬ್ಬ ವೇಶ್ಯಾಂ
ಗನೆಯ ಸುತನು ಯುಯುತ್ಸು ನೂರೊಂ
ದೆನಿಸಿತರಸು ಕುಮಾರಕರು ಗಾಂಧಾರಿಯುದರದಲಿ
ಜನಿಸಿದರು ನೂರೊಂದು ನೂರ್ವರಿ
ಗನುಜೆ ದುಸ್ಸಳೆಯಾದಳಾ ವರ
ಮಾನಿನಿ ಜಯದ್ರಥನರಸಿಯಾದಳು ರಾಯ ಕೇಳೆಂದ ೫೫

ಅತ್ತಲಾ ಹದನಾಯ್ತು ಬಳಿಕಿನ
ಲಿತ್ತ ಧರ್ಮಜ ಭೀಮಸೇನರ
ಹೆತ್ತ ಹರುಷದೊಳಿವರು ಮೆರೆದರು ಪಾಂಡು ಕುಂತಿಯರು
ಮತ್ತೆ ಕೇಳದ್ಭುತವನುರೆ ಮೊರೆ
ವುತ್ತ ಹೆಬ್ಬುಲಿ ವರತಪೋಧನ
ರತ್ತಲೈತರೆ ಪಾಂಡು ಕೆಡಹಿದನಾ ಮೃಗಾಂತಕನ ೫೬

ಆ ಮಹಾ ರಭಸಕ್ಕೆ ಮುನಿಪ
ಸ್ತೋಮವಂಜಿತು ಪರ್ವತಾಗ್ರದ
ಲಾ ಮಹೀಪತಿಯರಸಿ ನಡುಗಿದಳಹಹ ಶಿವಯೆನುತ
ಭೀಮ ಬಿದ್ದನು ತೊಡೆಯ ಮೇಲಿಂ
ದೀ ಮಹಿಗೆ ತಚ್ಛೈಲ ಶಿಲೆ ನಿ
ರ್ನಾಮವಾದುದು ಹಸುಳೆ ಹೊರಳಿದು ಬಿದ್ದ ಭಾರದಲಿ ೫೭

ಶಿಶುವ ತೂಪಿರಿದಳು ನಿವಾಳಿಸಿ
ಬಿಸುಟು ರಜವನು ಮಂತ್ರ ರಕ್ಷಾ
ಪ್ರಸರವನು ಮುನಿಗಳಲಿ ಮಾಡಿಸಿದಳು ಕುಮಾರಂಗೆ
ವಸುಧೆಗತಿ ಬಲನೊಬ್ಬ ಕಂದನ
ಬೆಸಲಹೆನುಯೆಂದೆನುತ ಸಾರಸ
ಲಸಿತ ಕಮಲಾಕರದ ತೀರಕೆ ಬಂದಳಾ ಕುಂತಿ ೫೮

ಮಿಂದು ಕಡು ಶುಚಿಯಾಗಿ ಸುಮನೋ
ವೃಂದದೊಳಗಾರೈದು ನೋಡಿ ಪು
ರಂದರನ ನೆನೆದಳು ಮುನೀಂದ್ರನ ಮಂತ್ರಶಕ್ತಿಯಲಿ
ಬಂದನಲ್ಲಿಗೆ ಬಯಕೆಯೇನರ
ವಿಂದಲೋಚನೆ ಹೇಳೆನಲು ಪೂ
ರ್ಣೇಂದುಮುಖಿ ತಲೆವಾಗಿದಳು ಲಜ್ಜಾನುಭಾವದಲಿ ೫೯

ಸುತನನಿತ್ತೆನು ನಿನಗೆ ಲೋಕ
ತ್ರಿತಯದಲಿ ಬಲುಗೈ ಕಣಾ ಪಶು
ಪತಿಗೆ ಪುರುಷೋತ್ತಮಗೆ ಸರಿಮಿಗಿಲೆಂಬ ಸಂದೇಹ
ಶತ ಭವಾಂತರ ಪುಣ್ಯತರು ಕಾ
ಮಿತವ ಫಲಿಸಿತು ಹೋಗೆನುತ ಸುರ
ಪತಿ ಲತಾಂಗಿಗೆ ವರವನಿತ್ತಡರಿದನು ಗಗನವನು ೬೦

ತೀವಿದವು ನವಮಾಸ ವಿಮಲ ವಿ
ಭಾವಸುವಿನುದಯದಲಿ ಶುಭ ಲ
ಗ್ನಾವಲಂಬನ ತಾರೆಯುತ್ತರೆ ಫಲುಗುಣಾಹ್ವಯದ
ಜೀವ ಕೇಂದ್ರ ಸ್ಥಿತಿ ದಶಾ ದಿ
ಗ್ಭಾವಿತ ಗ್ರಹರಾಶಿಯಿರೆ ಗಾಂ
ಡೀವಿ ಜನಿಸಿದನೊಡನೆ ಜನಿಸಿತು ಜನದ ಸುಮ್ಮಾನ ೬೧

ದೇವದುಂದುಭಿ ಮೊಳಗಿದುವು ಕುಸು
ಮಾವಳಿಯ ಮಳೆ ಸುರಿದುದಾಡುವ
ದೇವ ವಧುಗಳ ಹೊಳೆವ ಕಂಗಳ ಢಾಳ ಮಿಂಚಿದವು
ತೀವಿದುತ್ಸಹವುಬ್ಬರಿಸೆ ಭುವ
ನಾವಳಿಯೊಳಿಂದ್ರಾದಿ ನಿಖಿಳ ಸು
ರಾವಳಿಗಳುರೆ ಕೂಡೆ ಕೊಂಡಾಡಿತು ಧನಂಜಯನ ೬೨

ರಣಭಯಂಕರನರ್ಜುನನು ಧಾ
ರುಣಿಯೊಳುದಿಸದ ಮುನ್ನ ತಿಂಗಳ
ನೆಣಿಸಿದರೆ ಮೂರಾಯ್ತು ಮಧುರೆಯ ರಾಜಭವನದಲಿ
ಗುಣರಹಿತನಚ್ಯುತನು ವರ ಶ್ರಾ
ವಣ ಬಹುಳದಷ್ಟಮಿಯಿರುಳು ರೋ
ಹಿಣಿಯಲವತರಿಸಿದನಲೈ ದೇವಕಿಯ ಜಠರದಲಿ ೬೩

ಈತ ನರ ಋಷಿ ನಿಖಿಳ ಭುವನ
ಖ್ಯಾತ ನಾರಾಯಣನಲೈ ಬಳಿ
ಕಾತನುರ್ವೀಭಾರ ಸಂಹರಣದ ವಿನೋದದಲಿ
ಭೂತಪತಿ ಮೊದಲಾದ ದಿವಿಜ
ವ್ರಾತವೇ ನರರೂಪದಲಿ ಸಂ
ಭೂತವಾದುದು ಕೇಳು ನೃಪ ಕೃಷ್ಣಾವತಾರದಲಿ ೬೪

ಸಾಕು ಮೂವರು ಸುತರು ತನಗೆಂ
ದೀಕೆ ಮಾದ್ರೀದೇವಿಗಗ್ಗದ
ಶೋಕಿತೆಗೆ ಮಂತ್ರೋಪದೇಶ ವಿಧಾನವನು ಕಲಿಸಿ
ನಾಕ ನಿಲಯರ ವೊಲಿಸೆನಲು ಬಂ
ದಾಕೆ ಕೃತನಿಯಮದಲಿ ನೆನೆದಳು
ಲೋಕವಿಶ್ರುತರಶ್ವಿನೀ ದೇವರನು ಹರ್ಷದಲಿ ೬೫

ಬಂದರವರಿಬ್ಬರು ಮಹೀತಳ
ಕಿಂದುವದನೆಗೆ ಸುತರನಿತ್ತರು
ಮಂದಗಮನೆಯ ಕಳುಹಿ ಹಾಯ್ದರು ಗಗನಮಂಡಲಕೆ
ಒಂದು ವರುಷಕೆ ಕಿರಿಯರರ್ಜುನ
ಗಿಂದ ಬಳಿಕವತರಿಸಿದರು ಮುನಿ
ವೃಂದ ನೆರೆ ಪತಿಕರಿಸಿ ಕೊಂಡಾಡಿತು ಕುಮಾರಕರ ೬೬

ಕರಿ ತುರಗ ನಿಕರವನು ಕುಲ ಭೃ
ತ್ಯರ ವಿಲಾಸಿನಿಯರನು ರತ್ನಾ
ಭರಣ ವಸನ ಹಿರಣ್ಯ ಗೋ ಮಹಿಷಾದಿ ವಸ್ತುಗಳ
ತರಿಸಿದನು ಕಶ್ಯಪನು ಯದು ರಾ
ಯರ ಪುರೋಹಿತನಲ್ಲಿಗಾತನ
ಪರುಠವಿಸಿ ಕಳುಹಿದನು ಪಾಂಡುನೃಪಂಗೆ ವಸುದೇವ ೬೭

ಬಂದನಾ ಕಶ್ಯಪನು ಕುಂತೀ
ನಂದನರ ಕಂಡಖಿಳ ವಸ್ತುವ
ನಂದು ಕಾಣಿಕೆಯಿತ್ತು ಕಂಡನು ಪಾಂಡು ಭೂಪತಿಯ
ಅಂದು ವಸುದೇವಾದಿ ಯಾದವ
ವೃಂದ ರೋಹಿಣಿ ದೇವಕಿಯರಾ
ನಂದ ಸುಕ್ಷೇಮವನು ಕುಶಲವನರಸ ಬೆಸಗೊಂಡ ೬೮

ಯಾದವರ ಸುಕ್ಷೇಮ ಕುಶಲವ
ನಾದರಿಸಿ ಬಳಿಕಾದ ಪರಮಾ
ಹ್ಲಾದದಲಿ ಕಶ್ಯಪನೊಳಾಲೋಚಿಸಿ ಮಹೀಪಾಲ
ವೈದಿಕೋಕ್ತಿಯ ಚೌಲವುಪನಯ
ನಾದಿ ಸಕಲ ಕ್ರಿಯೆಗಳನು ಗಾ
ರ್ಗ್ಯಾದಿ ಋಷಿಗಳನುಜ್ಞೆಯಲಿ ಮಾಡಿಸಿದನನಿಬರಿಗೆ ೬೯

ಈತನೇ ಧರ್ಮಜನು ಯೆರಡನೆ
ಯಾತ ಭೀಮನು ಬಳಿಕ ಮೂರನೆ
ಯಾತನರ್ಜುನ ನಕುಲನೈದನೆಯಾತ ಸಹದೇವ
ಈತಗಳು ಕೌಂತೇಯ ಮಾದ್ರೇ
ಯಾತಿಶಯ ಪರಿಭೇದ ರಹಿತ
ಖ್ಯಾತರೆಂದರು ಪರಮಮುನಿಗಳು ಪಾಂಡುನಂದನರ ೭೦

ಐದನೆಯ ಸಂಧಿ

ಸೂ. ವರಮುನಿಯ ಶಾಪದಲಿ ಸರಿದನು
ಸುರರ ನಗರಿಗೆ ಪಾಂಡು ಹಸ್ತಿನ
ಪುರಕೆ ತಂದರು ಪರಮಮುನಿಗಳು ಪಾಂಡುನಂದನರ

ಕೇಳು ಜನಮೇಜಯ ಧರಿತ್ರೀ
ಪಾಲ ಶತಶೃಂಗಾದ್ರಿಯಲಿ ಭೂ
ಪಾಲನಿರ್ದನು ತನ್ನ ವೀರಕುಮಾರಕರು ಸಹಿತ
ವ್ಯಾಳ ವನಗಜ ಸಿಂಹ ವೃಕ ಶಾ
ರ್ದೂಲ ಭಯವನು ಪರಿಹರಿಸಿ ಮುನಿ
ಪಾಳಿಗಾಶ್ರಯವೆನಿಸಿದನು ಪಾವನ ತಪೋವನವ ೧

ಆ ಸಮಸ್ತ ಮುನೀಂದ್ರರೊಡನ
ಭ್ಯಾಸವಾ ದಿವ್ಯಾಶ್ರಮದ ಸಹ
ವಾಸವಾ ತಪವಾ ಕುಮಾರ ಪರಾಕ್ರಮಾಲೋಕ
ಆ ಸಮಂಜಸ ಸತಿಯರಿಬ್ಬರು
ಪಾಸನೆಗಳಾ ವಿಭವಕಿಭಪುರಿ
ಯಾ ಸಮಸ್ತೈಶ್ವರ್ಯವದು ತೃಣವಾಯ್ತು ಭೂಪತಿಗೆ ೨

ಸುತ ವಿನೋದದ ಸಿರಿಗೆ ಅಮರಾ
ವತಿಯ ಸಿರಿ ತೊತ್ತೆಂದು ವಿಮಲ
ವ್ರತ ತಪೋಲಕ್ಷ್ಮಿಗೆ ವಿಲಾಸಿನಿ ಮುಕ್ತಿವಧುವೆಂದು
ಯತಿ ಪದಾಂಬುಜ ನಿತ್ಯಸೇವಾ
ಸತಿಗೆ ದಾಸಿ ಜಗತ್ರಯಾದಿ
ಸ್ಥಿತಿ ಪದವಿಯೆಂದುಬ್ಬಿದನು ಕಲಿಪಾಂಡು ವಿಪಿನದಲಿ ೩

ವರುಷ ಹದಿನಾರಾಯ್ತು ಧರಣೀ
ಶ್ವರನ ಹಿರಿಯ ಮಗಂಗೆ ಭೀಮಗೆ
ವರುಷ ಹದಿನೈದರ್ಜುನಗೆ ಹದಿನಾಲ್ಕು ಹದಿಮೂರು
ಕಿರಿಯರಿಬ್ಬರಿಗನಿಬರಾ ಮುನಿ
ವರರಿನಧ್ಯಯನಾದಿ ವಿದ್ಯಾ
ನಿರತರಾದರು ಬಂದುದೊಂದು ವಸಂತಮಯ ಸಮಯ ೪

ತೆಗೆದುದಗ್ಗದ ತಂಪು ನದಿ ಸರ
ಸಿಗಳ ತಡಿಯಲಿ ಹಜ್ಜೆಯಾದುದು
ಹಗಲು ಹಾವಸೆ ಹರಿದು ಹೊಕ್ಕರಿಸಿದುದು ಹಿಮಜಲವ
ಸೊಗಸಿದವು ನೆಳಲುಗಳು ದೂರಕೆ
ಸೆಗಳಿಕೆಗಳೇರಿದವು ತಂಗಾ
ಳಿಗೆ ವಿಹಾರಿಸಿ ಮೈಯ ತೆತ್ತುದು ಕೂಡೆ ಜನನಿಕರ ೫

ಯೋಗಿಗೆತ್ತಿದ ಖಡುಗ ಧಾರೆ ವಿ
ಯೋಗಿಗೆತ್ತಿದ ಸಬಳವಖಿಳ ವಿ
ರಾಗಿಗಳ ಹೆಡತಲೆಯ ದಡಿ ನೈಷ್ಠಿಕರಿಗಲಗಣಸು
ಆಗಮಿಕರೆದೆ ಶೂಲ ಗರ್ವಿತ
ಗೂಗೆಗಳ ನಖಸಾಳವಗ್ಗದ
ಭೋಗಿಗಳ ಕುಲದೈವವೆಸೆದುದು ಕುಸುಮಮಯ ಸಮಯ ೬

ಮೊರೆವ ತುಂಬಿಯು ಗಾಯಕರ ನಯ
ಸರದ ಕೋಕಿಲ ಪಾಠಕರ ಬಂ
ಧುರದ ಗಿಳಿಗಳ ಪಂಡಿತರ ಮಾಮರದ ಕರಿಘಟೆಯ
ಅರಳಿದಂಬುಜ ಸತ್ತಿಗೆಯ ಮಂ
ಜರಿಯ ಕುಸುಮದ ಚಾಮರದ ಚಾ
ತುರ ವಸಂತನೃಪಾಲ ನಡೆದನು ಪಾಂಡುವಿನ ಮೇಲೆ ೭

ಫಲಿತ ಚೂತದ ಬಿಣ್ಪುಗಳ ನೆರೆ
ತಳಿತಶೋಕೆಯ ಕೆಂಪುಗಳ ಪರಿ
ದಳಿತ ಕಮಲದ ಕಂಪುಗಳ ಬನಬನದ ಗುಂಪುಗಳ
ಎಳ ಲತೆಯ ನುಣ್ಪುಗಳ ನವ ಪರಿ
ಮಳದ ಪವನನ ಸೊಂಪುಗಳ ವೆ
ಗ್ಗಳಿಕೆ ಝಳಪಿಸಿ ಹೊಯ್ದು ಸೆಳೆದುದು ಜನದ ಕಣ್ಮನವ ೮

ಪಸರಿಸಿತು ಮಧು ಮಾಸ ತಾವರೆ
ಯೆಸಳ ದೋಣಿಯು ಮೇಲೆ ಹಾಯ್ದವು
ಕುಸುಮ ರಸದುಬ್ಬರದ ತೊರೆಯನು ಕೂಡೆ ತುಂಬಿಗಳು
ಒಸರ್ವ ಮಕರಂದದ ತುಷಾರದ
ಕೆಸರೊಳದ್ದವು ಕೊಂಚೆಗಳು ಹಗ
ಲೆಸೆವ ದಂಪತಿವಕ್ಕಿ ಸಾರಸ ರಾಜಹಂಸಗಳು ೯

ಜಗವ ಹೊರೆದುದು ಬಹಳ ಪರಿಮಳ
ದೊಗುಮಿಗೆಯ ತಂಗಾಳಿ ವನ ವೀ
ಥಿಗಳ ವಳಯವ ಹೊಕ್ಕು ಮರಳಿದುದಿಲ್ಲ ವಿರಹಿಗಳು
ಹೊಗುವ ಕಾಮನ ದಳದ ಚೂಣಿಯು
ಸೊಗಸು ಹೊಯ್ದರೆ ಕೈದುವಿಕ್ಕಿತು
ವಿಗಡ ಮುನಿಜನವೇನನೆಂಬೆನು ನೃಪತಿ ಕೇಳೆಂದ ೧೦

ಆ ವಸಂತದೊಳೊಮ್ಮೆ ಮಾದ್ರೀ
ದೇವಿ ವನದೊಳಗಾಡುತಿರ್ದಳು
ಹೂವಿನಲಿ ಸರ್ವಾಂಗ ಶೃಂಗಾರದ ವಿಲಾಸದಲಿ
ಆವಳಿವಳೂರ್ವಶಿಯೊ ರಂಭೆಯೊ
ದೇವವಧುಗಳ ಸುಳಿವೊ ತಾನೆನ
ಲಾವ ಚೆಲುವಿಕೆ ಶಿವಶಿವಾಯೆಂದರಸ ಬೆರಗಾದ ೧೧

ತಾಗಿದವು ಶರನಿಕರ ಕಾಮನ
ಲಾಗು ವೇಗವದೆಂತುಟೋ ತೆಗೆ
ಹೂಗಣೆಗಳೈದಲ್ಲ ರೋಮಗಳೆಂಟು ಕೋಟಿಯಲಿ
ತೂಗಿ ನೆಟ್ಟವು ಕಣೆಗಳೆಂಬವೊ
ಲಾ ಗರುವನಳುಕಿದನು ಪ್ರಜ್ಞಾ
ಸಾಗರಂಗಳು ಮಧ್ಯಕಟಿ ಜಾನ್ವಂಘ್ರಿ ಮಿತವಾಯ್ತು ೧೨

ಮರೆದು ಹಿಂದೆಲ್ಲವನು ಕುಂತಿಯ
ನರಿಯಲೀಯದೆ ಮೆಲ್ಲ ಮೆಲ್ಲನೆ
ತುರುಗಿದೆಳಲತೆ ವನದೊಳಾಡುವ ವಧುವ ಸಾರಿದನು
ಸೆರಗ ಹಿಡಿದರೆ ಬೇಡ ಬೇಡೆಂ
ದೆರಗಿದಳು ಚರಣದಲಿ ತರುಣಿಯ
ತುರುಬ ಹಿಡಿದೆತ್ತಿದನು ಹೆಣಗಿದರೊಡನೆ ಝೋಂಪಿಸಿದ ೧೩

ಕೊಂದೆಲಾ ಕಡುಪಾಪಿ ಮರೆದಾ
ಹಿಂದೆ ಮಾಡಿದ ಕೃತ್ಯವನು ಮುನಿ
ಯೆಂದ ನುಡಿ ಹೊಳ್ಳಹುದೆ ಸುಡು ದುರ್ವಿಷಯ ಕೆಳಸಿದಲಾ
ಬೆಂದುದೇ ನಿನ್ನರಿವು ಧೈರ್ಯವ
ನಿಂದು ನೀಗಿದೆಯಕಟ ನಿನ್ನಯ
ನಂದನರಿಗಾರುಂಟೆನುತ ಹೆಣಗಿದಳು ಲಲಿತಾಂಗಿ ೧೪

ಕೊಂಬುದೇ ಬಯಲರಿತಗಿರಿತದ
ಡೊಂಬಿನಾಗಮ ನೀತಿಗೀತಿಯ
ಶಂಬರಾರಿಯ ಸಬಳವಲ್ಲಾ ಬೇಗೆ ಮೂಡಿದುದು
ಬೆಂಬಿಡದೆ ಮರಳಿದೊಡೆ ಮರುವೊಸೆ
ಗೊಂಬುದೆಂಬವೊಲವನಿಪತಿಯೊ
ತ್ತಂಬರದಿ ಹಿಡಿದಬಲೆಯನು ಕೂಡಿದನು ಕಳವಳಿಸಿ ೧೫

ಆ ಸುಖದ ಝೋಂಪಿನಲಿ ಮೈಮರೆ
ದೋಸರಿಸಿದುದು ವದನ ಕಂಗಳು
ಪೈಸರಿಸಿದವು ತೆಕ್ಕೆ ಸಡಲಿತು ದೇಹ ಬಾರಿಸಿತು
ಸೂಸಿದುದು ನಿಟ್ಟುಸುರು ರಾಣೀ
ವಾಸದುರದಲಿ ಕದಪನಿಟ್ಟು ಮ
ಹೀಶನೊರಗಿದ ಹದನ ಕಂಡಳು ಕಾಂತೆ ಭೀತಿಯಲಿ ೧೬

ಅಕಟ ಪಾಂಡು ಮಹೀಶ ವಿಷ ಕ
ನ್ನಿಕೆಯನೆನ್ನನು ಮುಟ್ಟಿದೈ ಬೇ
ಡಕಟ ಕೆಡಿಸದಿರೆನ್ನೆನೇ ತಾನರಿಯನೇ ಹದನ
ಪ್ರಕಟ ಕುರುಕುಲ ತಿಲಕರೀ ಬಾ
ಲಕರನಾರಿಗೆ ಕೊಟ್ಟೆ ತನ್ನೊಡ
ನಕಟ ಮುನಿದೈ ಮಾತನಾಡೆಂದೊರಲಿದಳು ಮಾದ್ರಿ ೧೭

ಏನಿದೆತ್ತಣ ರಭಸ ಮಾದ್ರೀ
ಮಾನಿನಿಯೊ ಹಾ ರಾಯನಾವೆಡೆ
ಹಾನಿ ಹಿರಿದುಂಟರಿವೆನಂಗಸ್ಫುರಿತ ಶಕುನದಲಿ
ಏನು ಮಾರಿಯೊ ಶಿವಶಿವಾಯೆನು
ತಾ ನಿತಂಬಿನಿ ಗಾಢ ಗತಿಯಲಿ
ಕಾನನದೊಳೈತಂದಳಕ್ಕೆಯ ಸರದ ಬಳಿವಿಡಿದು ೧೮

ಕಂಡಳವರಿಬ್ಬರನು ಧೊಪ್ಪನೆ
ದಿಂಡುಗೆಡೆದಳು ಮೂರ್ಛೆಯಲಿ ಮರೆ
ಗೊಂಡುದೆಚ್ಚರ ಮಾದ್ರಿ ಮಿಗೆ ಹಲುಬಿದಳು ಗೋಳಿಡುತ
ಚಂಡಿಕೆಗಳಲ್ಲಾಡೆ ಹರಿದರು
ಪಾಂಡುನಂದನರೈವರೀತನ
ಕಂಡು ಹಾಯೆಂದೊರಲಿ ಹೊರಳಿದರವನಿಪನ ಮೇಲೆ ೧೯

ಬೊಪ್ಪ ದೇಶಿಗರಾದೆವೈ ವಿಧಿ
ತಪ್ಪಿಸಿತಲಾ ನಮ್ಮ ಭಾಗ್ಯವ
ನೊಪ್ಪಿಸಿದೆ ನೀನಾರಿಗೆಮ್ಮನು ಪೂರ್ವಕಾಲದಲಿ
ಮುಪ್ಪಿನಲಿ ನಿನಗೀಯವಸ್ಥೆಯಿ
ದೊಪ್ಪುದೇ ಹೇರಡವಿಯಲಿ ಮಲ
ಗಿಪ್ಪುದೇಕೆಂದೊರಲಿ ಮರುಗಿದರಾ ಕುಮಾರಕರು ೨೦

ಕೇಳಿ ಹರಿತಂದುದು ಮುನಿವ್ರಜ
ವೇಳಿಗೆಯ ಕಡು ಶೋಕರಸದ ಥ
ಡಾಳವನು ನಿಲಿಸಿದರು ಸಂತೈಸಿಯೆ ಕುಮಾರಕರ
ಆಲಿಸಿದಳಾ ಕುಂತಿ ಮೂರ್ಛಾ
ವ್ಯಾಳವಿಷ ಪರಿಹರಿಸಿ ಧರಣೀ
ಪಾಲಕನ ನೋಡಿದಳು ಬಿಸುಟೈ ತನ್ನನಿಂದೆನುತ ೨೧

ಅರಸ ತನಗರುಹದೆ ಸುರಸ್ತ್ರೀ
ಯರಿಗೆ ಹರಿದೈ ನಿನ್ನ ವಧುಗಳ
ತುರುಬು ಕೊಯ್ಸುವೆನವರ ತೊತ್ತಿರ ಮಾಡುವೆನು ತನಗೆ
ಅರಸಿ ನೀನೀ ಮಕ್ಕಳನು ಸಂ
ವರಿಸಿಕೊಂಡಿಹುದೆಂದು ಮಾದ್ರಿಯ
ಕರವ ಹಿಡಿದರೆ ಕುಂತಿಗೆಂದಳು ಕಾಂತೆ ವಿನಯದಲಿ ೨೨

ಮರುಳಿಲೌ ನೀವಕ್ಕ ನಿಮ್ಮೈ
ವರು ಕುಮಾರರು ನಿಮ್ಮ ಕೈಯೆಡೆ
ಧರಣಿಪತಿ ನಿಡು ನಿದ್ರೆಗೈದನು ನನ್ನ ತೋಳಿನಲಿ
ಸುರವಧುಗಳೊಡನಿರಲಿ ನಿನ್ನಯ
ಹರಿಬವೆನ್ನದು ನೋಡು ತನ್ನಯ
ಪರಿಯನೀತನು ನಿನಗೆ ಕೊಡೆನೆಂದಂಘ್ರಿಗೆರಗಿದಳು ೨೩

ಮುನಿಗಳೀಕೆಯ ತಿಳುಹಿ ಮಾದ್ರಿಗೆ
ಜನಪತಿಯ ಸಹಗಮನದಲಿ ಮತ
ವೆನಿಸಿ ಶವಸಂಸ್ಕಾರವನು ವೈದಿಕವಿಧಾನದಲಿ
ಮುನಿಗಳೇ ಮಾಡಿದರು ಮಾದ್ರೀ
ವನಿತೆ ತನ್ನ ಕುಮಾರರಿಬ್ಬರ
ತನುಜ ನೀ ಸಲಹೆಂದು ಕೊಟ್ಟಳು ಧರ್ಮಜನ ಕರೆದು ೨೪

ಪತಿಯ ಸಹಗಮನದಲಿ ಮಾದ್ರೀ
ಸತಿ ಶರೀರವ ಬಿಟ್ಟಳೈವರು
ಸುತರು ಸಹಿತೀ ಕುಂತಿ ಮಿಂದು ಪರೇತ ಕೃತ್ಯವನು
ಶ್ರುತಿ ವಿಧಾನದೊಳಖಿಳ ಮುನಿ ಸಂ
ತತಿಗಳನು ಮುಂದಿಟ್ಟು ಮಾಡಿಸಿ
ಸುತರ ಪಾಲಿಸುತಿರ್ದಳಾ ಶತಶೃಂಗ ಶೈಲದಲಿ ೨೫

ಅರಸನಪಗತನಾದನಾ ನೃಪ
ನರಸಿ ಬಾಲಕಿ ಮಕ್ಕಳೈವರು
ಭರತ ಕುಲಜರು ನಾವು ತಪಸಿಗಳಿರ್ಪುದಾರಣ್ಯ
ಅರಿಗಳಾ ರಾಕ್ಷಸರು ನಾವಿ
ನ್ನಿರಿಸುವುದು ಮತವಲ್ಲ ಹಸ್ತಿನ
ಪುರದೊಳೊಪ್ಪಿಸಿ ಬಹುದು ಮತವೆಂದುದು ಮುನಿಸ್ತೋಮ ೨೬

ಎಂದು ಕುಂತೀದೇವಿ ಸಹಿತಾ
ನಂದನರನೈವರನು ಮುನಿಗಳು
ತಂದರಿಭಪುರಿಗಾಗಿ ಭೀಷ್ಮಾದಿಗಳಿಗೀ ಹದನ
ಮುಂದೆ ಸೂಚಿಸಲುತ್ಸವದಿದಿ
ರ್ವಂದರನಿಬರು ಶುಭ ಮುಹೂರ್ತದೊ
ಳಂದು ನಗರಿಯ ಹೊಗಿಸಿದನು ಪರಿತೋಷದಲಿ ಭೀಷ್ಮ ೨೭

ಇವರ ಜನನ ಕ್ರಮವನಾ ಪಾಂ
ಡುವಿನ ವಿಕ್ರಮವನು ತಪೋಧನ
ನಿವಹ ಕೊಂಡಾಡಿದುದು ಬಳಿಕಿನ ಮರಣಸಂಗತಿಯ
ಅವನಿಪನ ಸಂಸ್ಕಾರ ಮಾದ್ರೀ
ಯುವತಿ ಸಹಗಮನೋರ್ಧ್ವ ದೇಹಿಕ
ವಿವಿಧ ಕೃತ್ಯವನೀ ಪ್ರಪಂಚವನವರಿಗರುಹಿದರು ೨೮

ಮುನಿಗಳಾಕ್ಷಣ ಮರಳಿದರು ತ
ಜ್ಜನಪ ವೃತ್ತಾಂತವನು ವಿವರಿಸೆ
ಜನಜನಿತ ಬಳಿಕುಬ್ಬಿ ಹರಿದುದು ಶೋಕರಸ ಜಲಧಿ
ಜನಪ ಧೃತರಾಷ್ಟ್ರಾದಿ ಬಾಂಧವ
ಜನ ಪುನಃ ಸಂಸ್ಕಾರದಲಿ ಭೂ
ಪನನು ದಹಿಸಿದರೂರ್ಧ್ವ ದೇಹಿಕವಾಯ್ತು ಮಗುಳಲ್ಲಿ ೨೯

ಅರಸ ಕೇಳೈ ಭೀಷ್ಮ ಧೃತರಾ
ಷ್ಟ್ರರನು ಬೋಧಿಸಿ ಬಹಳ ಶೋಕ
ಜ್ವರಕೆ ಬಿಡುಗಡೆ ಮಾಡಿದನು ಪಾರಾಶರಿವ್ರತಿಪ
ಕರೆದು ಯೋಜನಗಂಧಿಯನು ನೀ
ವಿರಲು ಬೇಡೌ ತಾಯೆ ನಿಮ್ಮಾ
ಭರತ ವಂಶದೊಳೊಗೆದ ಕಿಚ್ಚುರುಹುವುದು ನೃಪಕುಲವ ೩೦

ಹೇಳಬಾರದು ಮುಂದಣದು ದು
ಷ್ಕಾಲವಿಂದಿಗೆ ನಾಳೆ ನಾಳೆಗೆ
ನಾಳೆ ಬೆಟ್ಟಿತು ವರ್ಣಧರ್ಮಾಶ್ರಮದ ನೆಲೆಹೋಯ್ತು
ಕಾಲ ವಿಷಮವು ಕೌರವಕ್ಷಿತಿ
ಪಾಲ ಪಾಂಡು ಕುಮಾರರಲಿ ಕೈ
ಮೇಳವಿಸುವುದು ತಾಯೆ ಬಿಜಯಂಗೈಯಿ ನೀವೆಂದ ೩೧

ಎನಲು ಯೋಜನಗಂಧಿ ನಿಜ ನಂ
ದನನ ನುಡಿಯೇ ವೇದಸಿದ್ಧವಿ
ದೆನುತ ಸೊಸೆಯರ ಸಹಿತ ನಡೆದಳು ವರ ತಪೋವನಕೆ
ಮುನಿಪನತ್ತಲು ಬದರಿಕಾ ನಂ
ದನಕೆ ಮರಳಿದನಿತ್ತ ಗಂಗಾ
ತನುಜ ಸಲಹಿದನಖಿಳ ಪಾಂಡವ ಕೌರವ ವ್ರಜವ ೩೨

ಆರನೆಯ ಸಂಧಿ

ಸೂ. ಭೀಮ ದುರ್ಯೋಧನರ ಸೆಣಸಿನ
ತಾಮಸಿಕೆ ಹೆಚ್ಚಿದುದು ಕದನೋ
ದ್ದಾಮರಸ್ತ್ರಾಭ್ಯಾಸವನು ಮಾಡಿದರು ದ್ರೋಣನಲಿ

ಕೇಳು ಜನಮೇಜಯ ಮಹೀಪತಿ
ಬಾಲಕರು ನೂರಾರು ಮೆರೆದರು
ಬಾಲಕೇಳೀ ವ್ಯಸನಿಗಳು ಹೊರ ವಳಯದಲಿ ಪುರದ
ಆಳಿನೇರಿಕೆ ಹಿಡಿಗವಡೆ ಗುರಿ
ಯಾಳು ಚೆಂಡಿನ ಹೊಣಕೆ ಚಿಣಿ ಕೋ
ಲಾಳು ಗೊತ್ತಿನ ದಂಡೆಯೆನೆ ನಾನಾ ವಿನೋದದಲಿ ೧

ಗುಡುಗು ಗುತ್ತಿನಚೆಂಡು ಗುಮ್ಮನ
ಬಡಿವ ಕತ್ತಲೆ ಗುದ್ದುಗಂಬದ
ಗಡಣೆ ಕಣ್ಮುಚ್ಚಸಗವರಿ ಹರಿಹಲಗೆ ನಿಡುಗವಣೆ
ಕೆಡಹು ಕುಟ್ಟಿಗನಾದಿಯಾದವ
ಗಡ ವಿನೋದದಲಾಡಿದರು ಪಂ
ಗಡದಲೈವರು ನೂರ್ವರಿವರಿತ್ತಂಡವೊಂದಾಗಿ ೨

ಅದರೊಳೊಬ್ಬನೆ ಭೀಮನನಿಬರ
ಸದೆವ ತಾ ಸೋತರೆ ವಿಭಾಡಿಸಿ
ಕೆದರುವನು ಗೆದ್ದೋಡಿದರೆ ಬೆಂಬತ್ತಿ ಓಡಿದೆಳೆದು
ಸದೆದು ಬಿಡುವನು ಮುನ್ನ ಭೀಷ್ಮಂ
ಗೊದರಿ ದೂರುವನನಿಬರನು ಮೇ
ಳದಲಿ ಮುಗುಳೊಂದಾಗಿ ಸಂಗಡವಹರು ಸೂರುಳಿದು ೩

ಕೆಣಕಿ ದುರ್ಯೋಧನನ ನೆತ್ತಿಯ
ನಣೆದು ಹಾಯ್ವನು ನಿಮ್ಮ ನೂರ್ವರ
ಬಣಗುಗಳಿಗೆಡಗಾಲ ತೊಡರಿದೆ ಬನ್ನಿ ನೀವೆನುತ
ಗುಣವ ನುಡಿದೊಂದಾಗಿ ಕೆಳೆಗೊಂ
ಡಣಕಿಸದೆ ಮೈಮರೆಸಿ ಮರೆಯಲಿ
ಹಣಿದು ಬಿಡುವರು ಭೀಮನನು ದುರ್ಯೋಧನಾದಿಗಳು ೪

ಹೇಳುವರು ಯಮಜಂಗೆ ನಿನ್ನವ
ನೂಳಿಗವ ನಿಲಿಸೆಂದು ಪಾರ್ಥಗೆ
ಹೇಳುವರು ಬಳಿಕವರು ಭೀಮನ ಕರೆದು ಗಾರುಡಿಸೆ
ಕೇಳುವನು ಹೈಯೆಂದು ತನ್ನಯ
ಸೋಲದಲಿ ಮೈಯೊಡ್ಡುವನು ಮೇ
ಲಾಳನೇರಿಸಿ ಹರಿದು ಸದೆವನು ಗುತ್ತಿನಲಿ ಕೆಡಹಿ ೫

ಅಳುತ ಧೃತರಾಷ್ಟ್ರಂಗೆ ಭೀಮನು
ಕಳೆದ ಹಲುಗಳನೊಡೆದ ಮೊಳಕಾ
ಲ್ಗಳನು ತೋರಿಸಿ ದೂರುವರು ದುರ್ಯೋಧನಾದಿಗಳು
ಮುಳು ಮೊನೆಗಳಲಿ ಗೀರಿ ನೆತ್ತರ
ಗಳೆದು ಹುಡಿಯಲಿ ಹೊರಳಿ ತಾ ಬಂ
ದಳುತ ಧೃತರಾಷ್ಟ್ರಂಗೆ ಭೀಷ್ಮಗೆ ದೂರುವನು ಭೀಮ ೬

ಆಕೆವಾಳರು ಭೀಷ್ಮ ವಿದುರರು
ಸಾಕು ನಿಮ್ಮೊಳು ನೂರು ನಾಲ್ವರು
ಆ ಕುಮಾರರು ಬೇರೆ ನೀನಿಹುದೊಬ್ಬ ಬೇರೆಂದು
ನೂಕಿ ಸೂರುಳು ಮಾಡಿ ಬಿಟ್ಟರೆ
ನಾಕು ಜಾವದೊಳಿಹರು ಮರುದಿನ
ವಾ ಕುಮಾರರು ತಮ್ಮೊಳೊಂದಾಗಿಹರು ಗೆಳೆಯಾಗಿ ೭

ಒಂದು ದಿನ ನೂರಾರು ಮಾನಿಸ
ರೊಂದು ಗೆಳೆಯಲಿ ಪುರದ ಹೊರಗಿಹು
ದೊಂದು ಠಾವು ಪ್ರಮಾಣ ವೃಕ್ಷವ ಕಂಡು ನಡೆತರಲು
ಬಂದು ನಿಂದರು ಕೋಲ ಬಿಸುಟೀ
ವೃಂದ ಹತ್ತಿತು ಮರನನಿವನೈ
ತಂದು ತಂದೆಡೆಯಾಡಿ ಬಳಲಿದು ನೋಡಿದನು ಭೀಮ ೮

ಮರನ ಹಿಡಿದಲುಗಿದರೆ ಬಿದ್ದರು
ಭರತ ಕುಲ ಪಾಲಕರು ನೂರೈ
ವರು ಮಹಾವಾತದಲಿ ತರುಫಲನಿಕರ ಬೀಳ್ವಂತೆ
ಶಿರವೊಡೆದು ಬೆನ್ನೊಡೆದು ಮೊಳಕಾ
ಲ್ಜರಿದು ಕೈಗಳು ಮುರಿದು ನೆತ್ತರು
ಸುರಿದು ಧೃತರಾಷ್ಟ್ರಂಗೆ ದೂರಿದರನಿಬರೀ ಹದನ ೯

ದುರುಳನವನೊಡನಾಡ ಬೇಡೆಂ
ದರಸನನಿಬರ ಸಂತವಿಟ್ಟನು
ಹಿರಿದು ಹೆಚ್ಚಿತು ಭೀಮ ದುರ್ಯೋಧನರಿಗತಿ ವೈರ
ಮರಳಿ ತಾವೊಂದಾಗುತಾತನ
ಕರೆಸಿ ವಿವಿಧ ಕ್ರೀಡೆಯಲಿ ಮೈ
ಮರೆಸಿ ಭೀಮನ ಕಟ್ಟಿ ಹಾಯ್ಕಿದರೊಂದು ಮಡುವಿನಲಿ ೧೦

ಪಾಶವನು ಹರಿದೆದ್ದು ಬಂದತಿ
ರೋಷಿ ಸದೆದನು ಮತ್ತೆ ತಮ್ಮೊಳು
ಭಾಷೆಗಳಲೊಂದಾಗಿ ಕೂಡಿದರೊಂದು ದಿವಸದಲಿ
ಆ ಸಿತಗ ಮೈಮರೆದ ಹೊತ್ತು ಮ
ಹಾಸುರದ ಫಣಿಗಳಲಿ ಕಚ್ಚಿಸಿ
ಘಾಸಿ ಮಾಡಲು ಬದುಕಿ ಬೇಸರನಡಿಗಡಿಗೆ ಭೀಮ ೧೧

ಅರಸ ಕೇಳ್ ಆಯುಷ್ಯವುಳ್ಳರೆ
ಹರಿಹರ ಬ್ರಹ್ಮಾದಿಗಳು ಸಂ
ಹರಿಸಲರಿಯರು ಬರಿದೆ ದೈನ್ಯಂಬಡುವುದೀ ಲೋಕ
ಭರತ ವಂಶದ ಬಾಹಿರರು ನಿ
ಮ್ಮರಸುಗಳು ಭೀಮಂಗೆ ಮಾಡಿದ
ಹುರಿಯನಾ ಹುರಿ ಹರಿದ ಪರಿಯನು ಮತ್ತೆ ಕೇಳೆಂದ ೧೨

ಕಾಳಕೂಟ ಹಲಾಹಲವ ಕಾ
ರ್ಕೋಲ ದಾರದ ವತ್ಸನಾಭಿ ಕ
ರಾಳ ಸೌರಾಷ್ಟ್ರಿಕವ ಶೌಕ್ಲಿಕ ಸುಪ್ರದೀಪಕವ
ಹೇಳಲರಿದೆನಿಪೆಂಟು ವಿಷವನು
ಮೇಳವಿಸಿ ಬಳಿಕುಳಿದ ಮಧುರ ವಿ
ಶಾಲವಸ್ತುಗಳಿಂದ ಕಜ್ಜಾಯಗಳ ಮಾಡಿಸಿದ ೧೩

ದಿಟ್ಟಿಸಿದರವೆ ಸೀವುದಂಗೈ
ಮುಟ್ಟಿದರೆ ಹುಗುಳಹುದು ಬಳಿಕವ
ನಟ್ಟ ಕೈ ಕರಣದ ಸುವಾರದ ವಿದ್ಯವೇನರಿದೊ
ಕೊಟ್ಟರೀತಂಗೆಲ್ಲವನು ಜಗ
ಜಟ್ಟಿ ಹಾಯಿಕಿಕೊಂಡು ನುಣ್ಣನೆ
ಚಿಟ್ಟು ಮುರಿಯಾಟದಲಿ ಸದೆದನು ಮತ್ತೆ ಕೌರವರ ೧೪

ಮಡುವಿನಲಿ ಹಾಯ್ಕಿದಿರಿ ಹಾವಿನ
ಹೆಡೆಯ ಕೊಂಡೂರಿದಿರಿ ಬಲು ವಿಷ
ದಡಿಗೆಗಳ ಮೆಲಿಸಿದಿರಿ ಬಲ್ಲಂದದ ವಿಕಾರದಲಿ
ಕೆಡಹಲನು ಮಾಡಿದಿರಿ ನೂರ್ವರ
ಕಡಿದು ಶಾಕಿನಿಯರಿಗೆ ರಕುತವ
ಕುಡಿಸಿದಲ್ಲದೆ ಮುನ್ನ ಸಾವೆನೆ ಕೇಳಿ ನೀವೆಂದ ೧೫

ಒಳಗೆ ಬೆಳೆದುದು ವೈರಶಿಖಿ ಕಡೆ
ಗಳಕೆ ಹಾಯ್ದುದು ಜನನಿ ಜನಕರ
ಬಲು ನುಡಿಗಳಲಿ ನೂರ್ವರಿರ್ದರು ಶಕುನಿ ಮತವಿಡಿದು
ಬಲುಹುಗುಂದದೆ ಭೀಷ್ಮ ವಿದುರರ
ಬಳಕೆಯಲಿ ತಾವಡಗಿ ಗುಣದಲಿ
ಕೆಲನ ಮೆಚ್ಚಿಸಿ ನಡೆದರಿವರು ಯುಧಿಷ್ಠಿರಾದಿಗಳು ೧೬

ಆಟದಲಿ ತೊಡಗಿದರು ಮೊದಲಲಿ
ತೋಟಿಯುನು ಸಾಕೀತಗಳ ಕಾ
ಲಾಟವನು ನಿಲಿಸುವೆನು ಶಸ್ತ್ರಾಸ್ತ್ರ ಪ್ರಸಂಗದಲಿ
ಆಟವಿಕರಿವದಿರಲಿ ಬಲಿದೊಳ
ತೋಟಿ ಬರಿದೇ ಬಿಡದು ಮೃತ್ಯುವಿ
ನೂಟ ಮುಂದಿಹುದೆಂದು ಕರೆಕರೆಗುಂದಿದನು ಭೀಷ್ಮ ೧೭

ಧರಣಿಪತಿ ಚಿತ್ತೈಸು ಗೌತಮ
ವರ ಮುನಿಗೆ ಜನಿಸಿದ ಶರದ್ವನು
ಪರಮಋಷಿಯಾತನು ತಪೋಯುತನಾಗಿ ಧನು ಸಹಿತ
ಇರುತ ಕಂಡನು ದೈವ ಗತಿಯಲಿ
ಸುರವಧುವನಾಕ್ಷಣಕೆ ಕಾಮ
ಜ್ವರಿತನಾದನು ಚಲಿಸಿತಾತನ ವೀರ್ಯವವನಿಯಲಿ ೧೮

ಅದು ಶರಸ್ತಂಭದಲಿ ನೆಲೆಯಾ
ದುದು ಮುನಿಚ್ಯುತ ವೀರ್ಯ ಮುನಿಸುತ
ರುದಿಸಿದರು ಶಂತನು ಮಹೀಪತಿ ಕಂಡು ಕೃಪೆಯಿಂದ
ಸದನದಲಿ ತನ್ಮಿಥುನವನು ಸಲ
ಹಿದನು ಕೃಪ ಕೃಪೆಯೆಂಬ ಹೆಸರಾ
ದುದು ಮಹಾಬಲನಾದನಾತನ ಕರೆಸಿದನು ಭೀಷ್ಮ ೧೯

ಆ ಕೃಪಾಚಾರಿಯನ ದೆಸೆಯಿಂ
ದೀ ಕುಮಾರರು ನಿಖಿಳ ತರ್ಕ
ವ್ಯಾಕರಣ ಮೊದಲೆನೆ ಚತುರ್ದಶ ವಿದ್ಯಗಳನರಿದು
ಲೋಕ ವೈದಿಕ ಮುಖ್ಯ ಸಕಲ ಕ
ಲಾ ಕುಶಲರಾದರು ಧನುಃಪ್ರವಿ
ವೇಕ ನಿಪುಣರನರಸುತಿದ್ದನು ಮತ್ತೆ ಗಾಂಗೇಯ ೨೦

ಮುನಿ ಭರದ್ವಾಜಾಖ್ಯನಿರ್ದನು
ಘನ ತಪೋನಿಷ್ಠೆಯಲಿ ದಿವಿಜಾಂ
ಗನೆಯ ಕಂಡನು ಗಾಯವಡೆದನು ಮದನನೆಸುಗೆಯಲಿ
ತನು ಪರಿಚ್ಯುತ ವೀರ್ಯವನು ಸ
ತ್ಕನಕ ಕಲಶದೊಳಿರಿಸಲಲ್ಲಿಯೆ
ಜನಿಸಿದನು ದ್ರೋಣಾಭಿಧಾನನು ಮುನಿಯ ದೆಸೆಯಿಂದ ೨೧

ದ್ರೋಣಕಲಶದೊಳಾದ ದೆಸೆಯಿಂ
ದ್ರೋಣನಾದನು ಬಳಿಕ ಮುನಿಯಾ
ದ್ರೋಣಗುಪನಯನಾದಿ ವಿಪ್ರಕ್ರಿಯೆಗಳನು ರಚಿಸಿ
ದ್ರೋಣನೊಡನೋದಿಸಿ ನೃಪಾಲ
ಶ್ರೇಣಿಯನು ಶಸ್ತ್ರಾಸ್ತ್ರ ಕಳೆಯಲಿ
ಜಾಣರನು ಮಾಡಿದನು ಭಾರದ್ವಾಜ ಮುನಿಯಂದು ೨೨

ಕೃಪನನುಜೆಯನು ತಂದು ದ್ರೋಣಂ
ಗುಪಯಮವ ಮಾಡಿದನು ಹರ್ಷದಿ
ದ್ರುಪದ ಬಂದೀ ದ್ರೋಣನೊಡನರಿದನು ಧನುಶ್ರುತಿಯ
ಕ ಪೆಯಲೀ ದ್ರೋಣಂಗೆ ಜನಿಸಿದ
ನಪರ ಶಂಕರ ರೂಪನಾಹವ
ನಿಪುಣನಶ್ವತ್ಥಾಮ ಭಾರದ್ವಾಜ ಗೋತ್ರದಲಿ ೨೩

ತಂದೆಯೊಳ್ ಶ್ರಮ ಮಾಡಿದರು ನೃಪ
ವೃಂದ ಸಹಿತೀ ದ್ರೋಣ ದ್ರುಪದರು
ನಿಂದನಾ ದ್ರುಪದಾಖ್ಯನಯ್ಯನು ದಿವಿಜ ನಗರಿಯಲಿ
ಅಂದು ಸಖ್ಯಪ್ರೀತಿಯನು ಸಾ
ನಂದದಲಿ ದ್ರೋಣಂಗೆ ವಿರಚಿಸಿ
ಬಂದು ನಿಜ ರಾಜ್ಯಾಭಿಷೇಕವನು ಧರಿಸಿದನು ದ್ರುಪದ ೨೪

ಇತ್ತಲೀ ದ್ರೋಣನ ಪಿತನು ಸುರ
ರತ್ತ ಸರಿದನು ಕೆಲವು ದಿವಸಕೆ
ತತ್ತಪೋವನದಲ್ಲಿ ವಿಪ್ರಕ್ರಿಯೆಗಳನು ಮಾಡಿ
ಹೊತ್ತ ದಾರಿದ್ರ್ಯದಲಿ ಮನ ಮರು
ಗುತ್ತ ದೇಶಾಂತರದೊಳಗೆ ತೊಳ
ಲುತ್ತ ಬಂದನು ತನ್ನ ಮಗ ಸಹಿತಡವಿಯಲಿ ದ್ರೋಣ ೨೫

ಪರಶುರಾಮಾಶ್ರಯಕೆ ಮುನಿಯೈ
ತರಲು ಭಾರದ್ವಾಜನನು ಸ
ತ್ಕರಿಸಿ ನುಡಿದನು ಜಾಮದಗ್ನ್ಯನು ಮಧುರ ವಚನದಲಿ
ಧರೆಯನಿತ್ತೆನು ದ್ವಿಜರಿಗೀಯವ
ಸರದೊಳಾ ನಿರ್ಧನನು ನೀನೆ
ಪರಮ ಋಷಿಯಾತಿಥ್ಯ ಪೂಜೆಗಭಾಗ್ಯ ನಾನೆಂದ ೨೬

ಧನರಹಿತ ನಾ ಹೊತ್ತ ಭಾರಿಯ
ಧನುವಿದೊಂದಿದೆ ದಿವ್ಯಶರವಿದೆ
ಮನಕೆ ಬಂದುದ ವರಿಸು ನೀನೆನೆ ದ್ರೋಣ ನಸುನಗುತ
ಎನಗೆ ನಿಮ್ಮಡಿಗಳ ಕೃಪಾಲೋ
ಕನವಲೇ ಪರಿಯಾಪ್ತಿ ಲೋಕದ
ಜನ ಮನೋರಂಜನವೆ ಬೇಹುದು ಶರವ ಕೊಡಿಯೆಂದ ೨೭

ಇವು ಮಹಾ ನಿಸ್ಸೀಮತರ ವೈ
ಷ್ಣವವಲೇ ದಿವ್ಯಾಸ್ತ್ರ ನಿವಹವ
ನವರು ಕೊಟ್ಟರು ಕೊಂಡನುಚಿತ ವಿಧಾನದಲಿ ದ್ರೋಣ
ಇವು ಮಹಾ ರಣರಂಗದಲಿ ಶಾ
ತ್ರವ ನಿವಾರಣವೈಸಲೆಮ್ಮೀ
ವ್ಯವಹೃತಿಗೆ ತಾನೇನುಪಾಯುವೆನುತ್ತ ಚಿಂತಿಸಿದ ೨೮

ಮಗನೆ ಬಲ್ಲೈ ದ್ರುಪದ ಭೂಪತಿ
ಮಗುವುತನದಿಂದೆಮ್ಮ ಸಖನೋ
ಲಗಿಸುವೆವು ನಾವಲ್ಲಿ ಸಲಹನೆ ಮಿತ್ರಭಾವದಲಿ
ಹೊಗುವ ನಡೆ ಪಂಚಾಲರಾಯನ
ನಗರಿಯನು ನಾವೆಂದು ಮುನಿ ಮೌ
ಳಿಗಳ ಮಣಿಯನು ಬೀಳುಕೊಂಡನು ರೇಣುಕಾ ಸುತನ ೨೯

ಬಂದನೀತನು ದ್ರುಪದ ರಾಯನ
ಮಂದಿರಕೆಯಾ ಬಾಗಿಲವನೊಡ
ನೆಂದನೆಲವೋ ನಾವು ನಿಮ್ಮರಸಂಗೆ ಪೂರ್ವದಲಿ
ಸಂದ ಮಿತ್ರರು ದ್ರೋಣಮುನಿಪತಿ
ಯೆಂದು ನಮ್ಮಭಿಧಾನ ನೀ ಹೇ
ಳೆಂದು ಕಳುಹಲು ಬಂದು ಬಿನ್ನಹ ಮಾಡಿದನು ಹದನ ೩೦

ಸಿರಿಯ ಮದವಧಿಕ ಪ್ರತಾಪೋ
ತ್ಕರದ ಮದ ಮೊದಲಾದ ಮದ ಸಂ
ಚರಣ ರಜದಲಿ ಮಾಸಿತೀತನ ಮನದ ಮಡಿ ವರ್ಗ
ತಿರಿವ ಹಾರುವರೊಡನೆ ಭೂಮಿಾ
ಶ್ವರರಿಗೆತ್ತಣ ಮೈತ್ರಿ ಹೋಗಲಿ
ಕರೆಯಬೇಡೆನೆ ಬಂದು ಬಾಗಿಲಲವ ನಿವಾರಿಸಿದ ೩೧

ಮರೆದನೇ ತಪ್ಪೇನು ನಾ ಕಂ
ಡರುಹಿ ಮರುಳುವವ್ಯಸಲೇಯೆನು
ತುರುಬಿದರೆ ತರುಬಿದರು ಕಂಬಿಯನಿಕ್ಕಿ ಬಾಗಿಲಲಿ
ಒರೆಯನುಗುಳಿಚಿ ಖಡ್ಗದಲಿ ಬಿಡ
ದರಿದನಿಕ್ಕೆಲದವರನೋಲಗ
ಕುರವಣಿಸಿದನು ಮುಂದೆ ನಿಂದನು ದ್ರುಪದ ಭೂಪತಿಯ ೩೨

ಏನೆಲವೊ ಪಾಂಚಾಲ ಚಿಕ್ಕಂ
ದಾನು ನೀನೊಂದಾಗಿ ತಂದೆಯೊ
ಳೇನನರಿದೆವು ಮರೆದು ಕಳೆದಾ ಹಾ ಮಹಾದೇವ
ಏನು ಬಂದಿರಿಯೆಂಬ ಗುಣವಚ
ನಾನುರಾಗವು ಸಾಲದೇ ಧನ
ವೇನು ಫಲ ಕಕ್ಕುಲಿತೆಯೆಮಗಿಲ್ಲೆಂದನಾ ದ್ರೋಣ ೩೩

ಸೂರಿಗಳಿಗತಿ ಮೂರ್ಖರಿಗೆ ಗಂ
ಭೀರರಿಗೆ ಭಂಡರಿಗೆ ವೇದಾ
ಚಾರ ಸಂಯುಕ್ತರಿಗನಾಚಾರ ಪ್ರಸಕ್ತರಿಗೆ
ಧೀರರಿಗೆ ಹಂದೆಗಳಿಗೆತ್ತಣ
ಸೇರುವೆಗಳೈ ಭೂಪರಿಗೆ ಬಡ
ಹಾರುವರಿಗೆತ್ತಣದು ಸಖತನವೆಂದನಾ ದ್ರುಪದ ೩೪

ಎಲವೊ ನಿನ್ನಾಸ್ಥಾನ ಸಹಿತೀ
ಹೊಳಲ ಸುಡುವೆನು ನಿನ್ನ ಸೀಳಿದು
ಬಲಿಯ ಕೊಡುವೆನು ಭೂತಗಣಕಿದಿರಲ್ಲ ನೀನೆನಗೆ
ಕಲಿತ ವಿದ್ಯದ ಕೋಲ ಮಕ್ಕಳ
ಕಳುಹಿ ಕಟ್ಟಿಸಿ ವಾಮ ಪಾದದಿ
ತಲೆಯನೊದೆವೆನು ಮರೆಯದಿರು ನೀನೆಂದನಾ ದ್ರೋಣ ೩೫

ಎಂದು ಭಾಷೆಯ ಮಾಡಿ ತನ್ನಯ
ನಂದನನನೊಡಗೊಂಡು ಜನಪದ
ವೃಂದ ಹಲವನು ಕಳೆದು ಬಂದನು ಹಸ್ತಿನಾಪುರಿಗೆ
ಅಂದು ಸಕಲ ಕುಮಾರಕರು ನಲ
ವಿಂದ ನಗರಿಯ ಹೊರಗೆ ಗುರಿಗಳ
ಮುಂದುವರಿದೆಸುತಿರಲು ಮುದದಲಿ ಕಂಡನಾ ದ್ರೋಣ ೩೬

ಬೆರಸಿದನು ನೆರವಿಯನು ನೋಡು
ತ್ತಿರೆ ಯುಧಿಷ್ಠಿರ ನೃಪನ ಹರಳುಂ
ಗುರ ವಿಘಾತಿಯೊಳುಗಿದು ಬಿದ್ದುದಗಾಧ ಕೂಪದಲಿ
ನೆರೆದು ತಡಿಯಲಿ ನಿಂದು ನೂರರು
ವರು ನಿರೀಕ್ಷಿಸಿ ಸಾಧ್ಯವಲ್ಲೆನು
ತಿರೆ ಮಗಂಗೆ ಮುನೀಂದ್ರನೆಂದನು ಬೇಗ ತೆಗೆಯೆಂದು ೩೭

ಸರಳ ತೊಡಚಿ ತದೀಯ ಮಣಿ ಬಂ
ಧುರದ ಮುದ್ರಿಕೆಗೆಚ್ಚು ಹಿಳುಕಿನ
ಶಿರಕೆ ಶರವಾ ಹಿಳುಕಿನಲಿ ಕಣೆಯೆಚ್ಚು ಬಂಧದಲಿ
ಸರಳ ಸಂದರ್ಭದಲಿ ನಿಮಿಷಾಂ
ತರಕೆ ಫಣಿಪನ ಹೆಡೆವಣಿಯನು
ದ್ಧರಿಸುವಂತಿರೆ ತೆಗೆದು ಬಿಸುಟನು ರತುನ ಮುದ್ರಿಕೆಯ ೩೮

ಕಂಡು ಬೆರಗಾದುದು ಕುಮಾರರ
ತಂಡ ತನತನಗೈದಿ ಭೀಷ್ಮನ
ನಂಡಲೆದುದೀ ಮುನಿಯನೀಗಲೆ ಸಂತವಿಡಿಯೆಂದು
ಚಂಡ ಭುಜಬಲನವರ ಕಾಣಿಸಿ
ಕೊಂಡು ಕೊಟ್ಟನು ಭೀಷ್ಮನವರಿಗೆ
ಖಂಡ ವಿಭವವನತುಳ ಧನಪತಿಯಾದನಾ ದ್ರೋಣ ೩೯

ವರ ಮುಹೂರ್ತದೊಳವರ ನೂರರು
ವರನು ಕೊಟ್ಟನು ಶಸ್ತ್ರವಿದ್ಯಾ
ಪರಿಣತರ ಮಾಡೆಂದು ದ್ರೋಣನ ಕೈಯಲಾ ಭೀಷ್ಮ
ಗರುಡಿ ಕಟ್ಟಿತು ನೂರು ಯೋಜನ
ವರೆಯ ವಿಸ್ತಾರದಲಿ ಸಾವಿರ
ಕುರಿಯ ಹೊಯ್ದರು ಪೂಜಿಸಿದರಾ ಚದುರ ಚಂಡಿಕೆಯ ೪೦

ಗರುಡಿ ಪೂಜಾ ವಿಭವ ಸಮನಂ
ತರದಲನಿಬರು ಸಮವ ತೊಡಗಿದ
ರರಸು ಮಕ್ಕಳು ಕೇಳಿದರು ನಾನಾ ದಿಗಂತದಲಿ
ಬರುತಲಿದ್ದರು ಕೂಡೆ ಹಸ್ತಿನ
ಪುರಿಗೆ ವಿದ್ಯಾರ್ಥಿಗಳು ಪಾರ್ಥಿವ
ವರ ಕುಮಾರರು ಬಂದು ಕಂಡರು ಶಸ್ತ್ರ ಪಂಡಿತನ ೪೧

ರಾಯ ಬಲ್ಲೈ ಮುನ್ನ ಶಿಶುವನು
ತಾಯಿ ಬಿಸುಟಳು ಗಂಗೆಯಲಿ ರಾ
ಧೇಯನಾದನು ರಾಧೆಯೆಂಬವಳೊಲಿದು ಸಾಕಿದರೆ
ಆಯತಾಕ್ಷನು ಪರಶುರಾಮನೊ
ಳಾಯುಧದ ಶ್ರಮುಗಲಿತು ಬಳಿಕದು
ವಾಯುವಾದೊಡೆ ಬಂದನಾ ಗಜಪುರಿಗೆ ಕಲಿಕರ್ಣ ೪೨

ಬಂದು ಹಸ್ತಿನಪುರಿಗೆ ರಾಧಾ
ನಂದನನು ದುರ್ಯೋಧನನನೈ
ತಂದು ಕಂಡನು ಕೌರವೇಶ್ವರನಿವರ ಕಾಣಿಸಿದ
ಅಂದು ಮೊದಲಾಗವರ ಸಖ್ಯಕೆ
ಸಂದ ಕಾಣೆನು ಕರ್ಣ ಕುರುಪತಿ
ಗೊಂದೆ ಜೀವನವೊಂದೆ ಮನ ಮತವೊಂದೆ ಕೇಳೆಂದ ೪೩

ಬೇಟೆ ಕರ್ಣನ ಕೂಡೆ ಹಗಲಿರು
ಳಾಟ ಕರ್ಣನ ಕೂಡೆ ಷಡುರಸ
ದೂಟ ಕರ್ಣನ ಕೂಡೆ ಶಸ್ತ್ರಾಭ್ಯಾಸವವ ಕೂಡೆ
ತೋಟಿ ಮನದಲಿ ನಗೆಯ ಮಧುರದ
ನೋಟ ಕಣ್ಣೆನೊಳುಳಿದವರ ಕೂ
ಡಾಟಗಳು ತಾವಿಬ್ಬರೊಂದೆನಿಸಿದರು ಜಗವರಿಯೆ ೪೪

ಸುರಗಿ ಸಬಳ ಕಠಾರಿಯುಬ್ಬಣ
ಹರಿಗೆ ಹಿರಿಯುಬ್ಬಣವಡಾಯುಧ
ಪರಿಘ ಚಕ್ರ ಮುಸುಂಡಿ ತೋಮರ ಭಿಂಡಿವಾಳ ಚಯ
ಪರಶು ಕಕ್ಕಡೆ ಮುಸಲ ಹಲ ಮು
ದ್ಗರ ಧನುರ್ದಂಡಾದಿ ಶಸ್ತ್ರೋ
ತ್ಕರದಲನಿಬರು ಕುಶಲರಾದರು ಮುನಿಯ ಗರುಡಿಯಲಿ ೪೫

ಜನಪ ಕೇಳೈ ಭೀಮ ದುರ್ಯೋ
ಧನರು ಗದೆಯಲಿ ಮಿಗಿಲು ಕರ್ಣಾ
ರ್ಜುನರು ಧನುವಿನಲಧಿಕರಾದರು ನೃಪಕುಮಾರರಲಿ
ತನತನಗೆ ಸರ್ವಾಯುಧಂಗಳ
ಲನಿಬರರಿದರು ಕೂಡೆ ಗುರುವಿನ
ಮನಕೆ ಹತ್ತೆಯವಾದನರ್ಜುನನಸ್ತ್ರ ಶಿಕ್ಷೆಯಲಿ ೪೬

ಏಳನೆಯ ಸಂಧಿ

ಸೂ. ರಾಯ ಕಟಕಾಚಾರ್ಯನಿಂದ ವಿ
ಘಾಯದಲಿ ನೊಂದನಲ ಮುಖದಲಿ
ರಾಯ ದ್ರುಪದನು ಪಡೆದ ಧೃಷ್ಟದ್ಯುಮ್ನ ದ್ರೌಪದಿಯ

ಕೇಳು ಜನಮೇಜಯ ಧರಿತ್ರೀ
ಪಾಲ ಕಲಿತರು ನಿಮ್ಮ ಪೂರ್ವ ನೃ
ಪಾಲಕರು ಸರಹಸ್ಯ ಸಾಂಗೋಪಾಂಗ ವಿದ್ಯೆಗಳ
ಸ್ಥೂಲದಲಿ ಸೂಕ್ಷ್ಮದಲಿ ಬಹಳ ವಿ
ಶಾಲದಲಿ ಸಂಕೋಚದಲಿ ಲಘು
ಪಾಳಿಯಲಿ ಹಾರದಲಿ ವಿವಿಧಾನುಪ್ರಯೋಗದಲಿ ೧

ಎಡಬಲದ ಮರ್ಯಾದೆ ಹೊಳಹಿನ
ಕಡಲ ತೆರೆವೆರೆಯದತಿ ಬವರಿಯ
ಬಿಡೆಯ ದುವ್ವಾಳಿಗಳ ಸೂಟಿಯ ಸರಳ ಸೋಹಿನಲಿ
ಕಡುಗಲಿಗಳೇರಾಟದಲಿ ಮಿಗೆ
ಝಡಿ ಪವಾಡ ದೃಢಾಯತಿಕೆಗಿದು
ಪಡಿಯ ನಳ ರೇವಂತರೆಂದುದು ರಾವುತಿಕೆಗಳಲಿ ೨

ನಗವನೊಡ್ಡಿದರೊಂದು ಸರಳಲಿ
ಹುಗಿಲುಗಳೆವ ವಿದೂರ ಪಾತದಿ
ಗಗನ ಯಂತ್ರವನೆಸುವ ಜೋಕೆಯ ಜೋದ ವಿದ್ಯದಲಿ
ಉಗಿವ ಬಿಡುವೆಡಬಲನ ಬವರಿಯ
ಲಗಿವ ಲವಣೆಯ ದಂತಿ ಶಿಕ್ಷೆಗೆ
ಮಿಗಿಲು ಭಗದತ್ತಾದಿಗಳಿಗೆಂದುದು ಕುಮಾರಕರ ೩

ರಥವ ರಕ್ಷಿಸಿಕೊಂಡು ನಿಜ ಸಾ
ರಥಿಯ ಕಾಯಿದು ಮುಂದೆ ಹೂಡಿದ
ರಥ ಹಯಂಗಳ ಮೈಗಳಲಿ ಮುಸೆಗಾಣದಂದದಲಿ
ಪ್ರಥಿತರಿಪು ಶಸ್ತ್ರಾಸ್ತ್ರವನು ರಿಪು
ರಥಿಕರನು ಸಮರದಲಿ ಜಯಿಸುವ
ರಥಿಕ ವಿದ್ಯೆದೊಳಿವರ ಸರಿ ಸುರ ನರರೊಳಿಲ್ಲೆಂದ ೪

ಇನಿಬರೊಳು ಬಿಲುಗಾರನಾರ
ರ್ಜುನನೊ ಕರ್ಣನೊ ಭೀಮ ದುರ್ಯೋ
ಧನರೊ ಮಾದ್ರೀಸುತರೊ ಮೇಣ್ ದುಶ್ಶಾಸನಾದಿಗಳೊ
ಮನದಿ ಕೈಯಲಿ ಕಂಗಳೋ ಲೋ
ಚನವೆ ಕಂಗಳೊ ಕಾಣಬೇಕೆಂ
ದೆನುತ ಗುರು ರಚಿಸಿದನು ಲಕ್ಷ್ಯವನೊಂದು ವೃಕ್ಷದಲಿ ೫

ಕಾಣಬಾರದು ಲಕ್ಷ್ಯವಗ್ಗದ
ಜಾಣ ಭಟರಿಗೆ ಕಟ್ಟಿದೊರೆಯಿದು
ಕಾಣಿಸಿದಿರೈ ಹೂಣಿಸಿದಿರೈ ಹೂಡಿದಂಬಿನಲಿ
ಕಾಣಿರೇ ಕರ್ಣಾದಿ ಸುಭಟ
ಶ್ರೇಣಿಯೆಂಬೀ ಗುರುವಿನಣಕವ
ನಾಣೆಯಿಟ್ಟವೊಲೆಚ್ಚು ಲಕ್ಷ್ಯವ ಕೆಡಹಿದನು ಪಾರ್ಥ ೬

ಹಿರಿದು ಮೆಚ್ಚಿ ಧನಂಜಯನನಾ
ದರಿಸಿ ಕೊಟ್ಟನು ಸಕಲ ವಿದ್ಯವ
ನುರುತರ ಪ್ರೇಮದಲಿ ಸೆಣಸಿದೊಡೇಕಲವ್ಯಕನ
ಬೆರಳ ಕೊಂಡನು ಪಾರ್ಥನನು ಪತಿ
ಕರಿಸಿದನು ತನಗಾದ ನೆಗಳಿನ
ದರಧುರದ ಭೀತಿಯನು ಗೆಲಿದನು ನರನ ದೆಸೆಯಿಂದ ೭

ಇರಲಿರಲು ಫಲುಗುಣನನೆಕ್ಕಟಿ
ಗರೆದು ಶಸ್ತ್ರಾಸ್ತ್ರ ಪ್ರಪಂಚದ
ಪರಮ ಸಿದ್ಧಾಂತವನು ಕಲಿಸಿ ಮಹಾಸ್ತ್ರ ಸಂಗತಿಯ
ಕರುಣಿಸಿದನಾಗ್ನೇಯ ಪೌರಂ
ದರ ಮಹಾ ವಾಯವ್ಯ ವಾರುಣ
ಹರಸಖ ಬ್ರಹ್ಮಾಸ್ತ್ರ ಸೌರೋರಗ ನಗಾದಿಗಳ ೮

ಒಂದು ದಿನ ವೊಡ್ಡೋಲಗಕೆ ಗುರು
ಬಂದು ಮನ್ನಿಸಿಕೊಂಡು ನಸುನಗು
ತೆಂದನಾ ಧೃತರಾಷ್ಟ್ರ ಗಂಗಾಸೂನು ವಿದುರರಿಗೆ
ಇಂದು ಪರಿಯಂತರವು ನಿಮ್ಮಯ
ನಂದನರನೋದಿಸಿದೆನರಭಿ
ನಂದನೀಯರೊ ನಿಂದ್ಯರೋ ನೀವ್ ನೋಡಬೇಕೆಂದ ೯

ಸಕಲ ಶಸ್ತ್ರಾಸ್ತ್ರದಲಿ ಗಜ ಹಯ
ನಿಕರದೇರಾಟದಲಿ ಲೋಕ
ಪ್ರಕಟ ಮಾರ್ಗೀಕೃತ ಚತುರ್ದಶ ವಿಮಲ ವಿದ್ಯದಲಿ
ಸಕಲ ಲಕ್ಷಣ ಗಣಿತ ಗಾರುಡ
ವಿಕಟ ಭರತಾದ್ಯಖಿಲ ಕಳೆಯಲಿ
ವಿಕಳರೋ ಸಂಪೂರ್ಣರೋ ನೀವ್ ನೋಡಬೇಕೆಂದ ೧೦

ಲೇಸನೆಂದಿರಿ ಸುತರ ವಿದ್ಯಾ
ಭ್ಯಾಸ ರಚಿತ ಶ್ರಮವನಾವರಿ
ದೈಸು ನಿಮಗುತ್ಸವವಲೇ ತಪ್ಪಾವುದುಚಿತವಲೆ
ಈಸು ದಿನವೀ ಮಕ್ಕಳೊಡನಾ
ಯಾಸವಿದು ಸಾಮಾನ್ಯವೇ ನಾ
ವೇಸು ಧನ್ಯರೊ ನಿಮ್ಮ ದೆಸೆಯಿಂದೆಂದನಾ ಭೀಷ್ಮ ೧೧

ಆದಿಯಲಿ ಪುರವೈರಿ ಬಳಿಕಿನೊ
ಳಾದನಗ್ಗದ ಪರಶುಧರನೀ
ಮೇದಿನಿಯೊಳೀ ಯುಗದಲನುಪಮ ಶಸ್ತ್ರ ವಿದ್ಯದಲಿ
ವೈದಿಕದಲೀ ನಿಮ್ಮವೋಲ್ ದೊರೆ
ಯಾದನಾರು ಕುಮಾರಕರ ಪು
ಣ್ಯೋದಯದ ಕಂದೆರವೆಯೈಸಲೆಯೆಂದನಾ ಭೀಷ್ಮ ೧೨

ಜೋಯಿಸನ ಕರೆದಖಿಳ ದಿವಸದೊ
ಳಾಯಿದರು ಶುಭದಿನವನವಗೆ ಪ
ಸಾಯದುಡುಗೊರೆ ಸಹಿತ ಮನ್ನಿಸಿ ಮನೆಗೆ ಕಳುಹಿದರು
ರಾಯನಾಜ್ಞೆಯೊಳಿಭ ಪುರದ ಹೊರ
ಗಾಯತದ ಭೂಮಿಯಲಿ ವಾಸ್ತು ವಿ
ಧೇಯವೆನಲಳವಡಿಸಿದರು ಹನ್ನೆರಡು ಯೋಜನವ ೧೩

ತರವಿಡಿದು ರಚಿಸಿದರು ನೆರೆಯು
ಪ್ಪರಿಗೆಗಳ ಹಂತಿಗಳನಂತಃ
ಪುರವ ತತ್ಪಾರ್ಶ್ವದಲಿ ಭಾರಿಯ ಭದ್ರ ಭವನಿಕೆಯ
ಪುರಜನದ ಪರಿಜನದ ನೆಲೆಯು
ಪ್ಪರಿಗೆಗಳ ರಚಿಸಿದರು ಹಸ್ತಿನ
ಪುರದ ಸಿರಿ ಸಾಮಾನ್ಯವೇ ನರನಾಥ ಕೇಳೆಂದ ೧೪

ನೆರೆದುದಗಣಿತ ಕರಿ ತುರಂಗಮ
ವರ ವರೂಥ ಪದಾತಿ ಭೂಮಿ
ಶ್ವರರು ಬಂದರು ನೋಡಲೆಂದು ದಿಗಂತ ಸಂತತಿಯು
ವರ ಮುಹೂರ್ತದ ದಿವಸದಲಿ ಸಾ
ಗರದ ತೆರೆ ಬಿಟ್ಟಂತೆ ಕಳನೊಳು
ನೆರೆದು ನಿಂದುದು ಜನ ನಿಕರವೇನೆಂಬೆನದ್ಭುತವ ೧೫

ಸಂದಣಿಸಿ ನೃಪ ರಾಣಿವಾಸದ
ಗೊಂದಣದ ದಂಡಿಗೆಗಳಿಳಿದವು
ಮುಂದೆ ಹೊಯ್ಕಂಬಿಗಳ ಜೋಡಿಯ ಜನ ಪಲಾಯನದ
ಬಂದರಾ ಗಾಂಧಾರಿ ಕುಂತಿಯ
ರಿಂದುಮುಖಿಯರ ಮೇಳದಲಿ ನಡೆ
ತಂದುದಗಣಿತ ಪುರವಧೂ ನಿಕುರುಂಬವೊಗ್ಗಿನಲಿ ೧೬

ವಿದುರ ಧೃತರಾಷ್ಟ್ರರು ಸಹಿತ ಸುರ
ನದಿಯ ಮಗನೈತಂದು ನವ ಭ
ದ್ರದಲಿ ಕುಳ್ಳಿರ್ದನು ಪಸಾಯಿತ ಸಚಿವ ಜನ ಸಹಿತ
ಒದರುವಗ್ಗದ ವಂದಿಗಳ ಬಿಡೆ
ಸದೆವ ಬಹು ವಿಧ ವಾದ್ಯರವ ಮಿ
ಕ್ಕೊದೆದು ಹೊಯುದು ಲೋಕ ಮೂರರ ಕರ್ಣಕೋಟರವ ೧೭

ಪರಿಪರಿಯ ಶೃಂಗಾರದಲಿ ನೂ
ರ್ವರು ಸಹಿತ ದುರ್ಯೋಧನನು ನಾ
ಲ್ವರು ಸಹಿತ ಯಮನಂದನನು ತಮ್ಮೆರಡು ಪಾರ್ಶ್ವದಲಿ
ಗುರುತನುಜ ಕೃಪ ಕರ್ಣ ಸುಬಲಾ
ದ್ಯರು ಪುರೋ ಭಾಗದಲಿ ಭೂಮೀ
ಶ್ವರರಸಂಖ್ಯರು ಹಿಂದೆ ಬರಲೈತಂದನಾ ದ್ರೋಣ ೧೮

ಹೊಯ್ದು ಕೋಣನ ಕುರಿಯ ಹಿಂಡಿನ
ತೊಯ್ದು ರಕ್ತೋದನದ ರಾಶಿಯ
ನೈದೆ ದೆಸೆದೆಸೆಗಳಲಿ ಬಲಿದರು ಭೂತ ತುಷ್ಟಿಗಳ
ಕೈದುಗಳ ತನಿವೆಳಗು ನೈದಿಲ
ಮೈದುನನ ಮಾರಂಕವೆನೆ ಬಂ
ದೈದೆ ರಂಗಸ್ಥಳವ ಹೊಕ್ಕುದು ರಾಜಸುತನಿಕರ ೧೯

ಬಾಗಿಲಲಿ ಕಟ್ಟೆಗೆಯ ಕೈಗಳ
ಲಾ ಗುರೂದ್ಭವ ಕೃಪರು ನಿಂದರು
ಸೀಗುರಿಯ ಸುಳಿವಿನ ತರಂಗದ ಸಾಲ ಸತ್ತಿಗೆಯ
ಸಾಗರದ ಗಳ ಗರ್ಜನೋದ್ಭಟೆ
ಹೋಗಲಿದಕದು ಪಾಡೆಯೆನೆ ಚಾ
ಪಾಗಮಾಚಾರ್ಯನ ಘಡಾವಣೆ ಘಲ್ಲಿಸಿತು ಜಗವ ೨೦

ಆ ಮಹಾ ಕಳನೆಂಟು ದಿಕ್ಕಿನ
ಹೋಮ ತೀರಲು ಘಳಿಗೆವಟ್ಟಲ
ಸೌಮುಹೂರ್ತಿಕರಾಯತ ಧ್ವನಿ ಸಾರ ಸಮಯದಲಿ
ಸೋಮ ವಂಶೋದ್ಭವ ನೃಪಾಲ ಲ
ಲಾಮನಗ್ಗದ ಧರ್ಮಸುತನು
ದ್ದಾಮ ಗುರುವಿಂಗೆರಗಿ ನಿಂದನು ನುಡಿಸಿದನು ಧನುವ ೨೧

ಅರಸ ಕೇಳ್ ಯುಧಿಷ್ಠಿರನು ಪರಿ
ಪರಿಯಯೆಸುಗೆಯ ಚಾಪ ವಿದ್ಯಾ
ನಿರತಿಶಯಕೋ ಯೆಂದು ಗರ್ಜಿಸಿತಾ ಸಭಾ ಜಲಧಿ
ಸುರಗಿ ಹಿರಿಯುಬ್ಬಣವಡಾಯುಧ
ಹರಿಗೆ ಚಕ್ರ ಮುಸುಂಡಿ ಮುದ್ಗರ
ಪರಶು ಮೊದಲಾದಖಿಳ ಶಸ್ತ್ರ ಶ್ರಮದ ತೋರಿಸಿದ ೨೨

ಕರಿ ತುರಗದೇರಾಟ ಮೊದಲಾ
ಗಿರೆ ಸಮಸ್ತ ನೃಪಾಲ ವಿದ್ಯಾ
ಪರಿಣತಿಗೆ ಹಿಗ್ಗಿದರು ಭೀಷ್ಮಾದಿಗಳು ಹರುಷದಲಿ
ಪರಿವಿಡಿಗಳಲಿ ನಕುಲ ಸಹದೇ
ವರು ವಿವಿಂಶತಿ ಚಿತ್ರಬಲ ದು
ರ್ಮರುಷಣರು ತೋರಿದರು ಶ್ರಮವನು ನೂರ್ವರೊಗ್ಗಿನಲಿ ೨೩

ಈತ ಧರ್ಮಜನಿವರು ಮಾದ್ರೀ
ಜಾತರೀತ ಸುಲೋಚನನು ಬಳಿ
ಕೀತ ದೀರ್ಘಕ ವಿಂದನಿವನಿಂತೀತನಿವನೆಂದು
ಈತ ಧನುವಿನಲೀತ ಖಡ್ಗದ
ಲೀತ ಪರಿಘದಲೀತ ಕುಂತದ
ಲೀತ ಬಲುಹೆಂದಂಧ ಭೂಪತಿಗರುಹಿದನು ವಿದುರ ೨೪

ಬಳಿಕ ನಾನಾ ದೇಶದರಸುಗ
ಳಿಳಿದು ತಮಗಳವಟ್ಟ ಶಸ್ತ್ರಾ
ವಳಿಗಳಲಿ ತೋರಿದರು ಮೆಚ್ಚಿಸಿ ತನ್ಮಹಾಸಭೆಯ
ನೆಲನನಬ್ಬರಿಸುವ ಸಭಾ ಕಳ
ಕಳದ ಮೊರೆಯನು ತಿವಿವ ಪರಿ ವೆ
ಗ್ಗಳದ ಪಾಯವಧಾರು ಮಸಗಿದುದೊಂದು ಘಟ್ಟಿನಲಿ ೨೫

ಹಗಲು ಕೈದೀವಿಗೆಯ ಬಿರುದಿನ
ವಿಗಡನಿವನಾರೆನಲು ಭೂಪಾ
ಳಿಗಳ ರತ್ನಪ್ರಭೆಯ ಲಹರಿಯ ಲಾವಣಿಗೆ ಮಿಗಿಲು
ಝಗ ಝಗಿಪ ತನುರುಚಿಯ ಮಿಂಚಿನು
ಮಿಗುವ ಖಡ್ಗಚ್ಛವಿಯ ತಲೆಯೊ
ತ್ತುಗಳ ಚಾವಡಿಯೊಳಗೆ ಕೌರವ ರಾಯನೈತಂದ ೨೬

ಹೋ ನಿರಂತರ ಗಜಬಜವು ತಾ
ನೇನು ಜೀಯವಧಾರು ಚಿತ್ತವ
ಧಾನವೆಂದುದು ಸಾಲ ಕಂಚುಕಿ ನಿಕರ ಕೈ ನೆಗಹಿ
ಭಾನುವಿನ ಭಾರಣೆಯವೋಲು
ತ್ಥಾನಮುಖ ಚತುರಾಕ್ಷ ಭೂಪನ
ಸೂನು ಹೊಕ್ಕನು ರಂಗವನು ಭೀಷ್ಮಾದಿಗಳಿಗೆರಗಿ ೨೭

ಬವರಿಯಲಿ ಪಯಪಾಡಿನಲಿ ಮೈ
ಲವಣಿಯಲಿ ಬಿನ್ನಾಣದಲಿ ಭಾ
ರವಣೆಯಲಿ ದೆಖ್ಖಾಳದಲಿ ವೇಗಾಯ್ಲ ರೇಖೆಯಲಿ
ತಿವಿವ ಮೊನೆಯೊಂದರಲಿ ನೂರಂ
ಗವನು ತೋರ್ಪ ವಿಭೇದದಲಿ ಕೌ
ರವ ಮಹೀಪತಿ ತೋರಿದನು ಶ್ರಮವನು ಕಠಾರಿಯಲಿ ೨೮

ಸುರಗಿಯಲಿ ಚಕ್ರದಲಿ ಹಲದಲಿ
ಪರಿಗೆಯಲಿ ಕಕ್ಕಡೆಯಲಸಿಯಲಿ
ಪರಿಘದಲಿ ಸಬಳದಲಿ ಗದೆಯಲಿ ಬಿಂಡಿವಾಳದಲಿ
ಪರಿಪರಿಯ ಚಿತ್ರದ ಚಮತ್ಕೃತಿ
ಕರವ ತೋರಿಸಿದನು ಶರಾಸನ
ಶರ ವಿಸರ ಸಂಧಾನದೊಳಗಹುದೆನಿಸಿದನು ಸಭೆಯ ೨೯

ಧೀರರೇ ಜಗಜಟ್ಟಿ ರಾಜ ಕು
ಮಾರ ಚೌಪಟಮಲ್ಲ ಕುರುಕುಲ
ಕೈರವಾಮೃತ ಕಿರಣ ಧಿರು ಧಿರು ಭಲರೆ ಭಲರೆನುತ
ಭೂರಿ ಸಭೆಯಲಿ ಸುಲಿದು ಬಿಸುಡುವ
ಸೀರೆಗಳ ತೂಪಿರಿದು ಸುಳಿವು
ಪ್ಪಾರತಿಯ ತನಿ ಹರಕೆ ತಳಿತುದು ತಾಯ ನೇಮದಲಿ ೩೦

ಏರಿ ತೋರಿದನಶ್ವ ಗಜ ರಥ
ವಾರನೇಳನು ಸಭೆಯೊಳೊಂದನು
ನೂರು ಪರಿಯಲಿ ತೋರಿದನು ಶಸ್ತ್ರಾಸ್ತ್ರ ಕೌಶಲವ
ಮೀರಿ ಹೆಚ್ಚಿದ ಹರುಷದಿಂದು
ಬ್ಬೇರಿದನು ಧೃತರಾಷ್ಟ್ರನುಬ್ಬಿದ
ಳಾರು ಮಡಿಯಲಿ ಜನನಿ ದುರ್ಯೋಧನನ ಪರಿಣತಿಗೆ ೩೧

ಮಸಗಿದಾನೆಯ ಕುಂಭದಲಿ ಝಾ
ಡಿಸುವ ಕೇಸರಿಯಂತೆ ಜಂಭನ
ಜಸದ ಝಾಡಿಗೆ ಬೆದರದಿದಿರಹ ವಜ್ರಧರನಂತೆ
ಪಸರಿಸಿದ ಪರಿವಾರ ಮಧ್ಯದೊ
ಳಸಮಬಲ ಹೊಳಕಿದನು ಮೇಘದ
ಮುಸುಕನುಗಿದಿನನಂತೆ ಮೈದೋರಿದನು ಕಲಿಭೀಮ ೩೨

ಗುರು ನದೀಸುತವಿದುರ ಧೃತರಾ
ಷ್ಟ್ರರಿಗೆ ಕೈಮುಗಿದಾಯುಧದ ಪರಿ
ಪರಿಯ ಚಿತ್ರಶ್ರಮವ ಸಾಂಗೋಪಾಂಗ ಕೌಶಲವ
ಕರಿ ತುರಗದೇರಾಟ ಮೊದಲಾ
ಗಿರೆ ಸುಯೋಧನ ರಚಿತ ವಿದ್ಯಾ
ಪರಿಣತಿಗೆ ವೆಗ್ಗಳವಿದೆನೆ ತೋರಿದನು ಕಲಿಭೀಮ ೩೩

ಕೋಲ ಗುರು ಚಿತ್ಯೆಸು ಕುರು ಭೂ
ಪಾಲ ಸಮ್ಮುಖನಾಗು ಹಿಡಿ ಮಾ
ರ್ಕೋಲನೆನ್ನೊಡನೆನುತ ತಿವಿದನು ಭೀಮ ಕುರುಪತಿಯ
ಮೇಳವಿಸಿತೆರಡಂಕ ಬಂದಿಗೆ
ಕೋಲ ಹೊಯ್ದಾಟದಲಿ ಬಳಿಕಾ
ಕೀಲುಗದೆಗಳ ಹಿಡಿದು ತರುಬಿದರಧಿಕ ರೋಷದಲಿ ೩೪

ಹೊಯ್ದರೊಡ್ಡಿದ ರಣದ ಮೊನೆಯಲಿ
ಹಾಯ್ದರೊಳ ಸುಳಿಯಿಂದ ಕಳೆದರು
ಕಾಯ್ದು ಹೆಣಗಿದರುಪ್ಪರಕೆ ಜಾರಿದರು ಪಡಿತಳಕೆ
ಮೈದೆಗೆದರಡ ಹೊಯ್ಲಿನಲಿ ಬಲು
ಗೈದುಗಾರರು ಮನದ ಖತಿಗಿದಿ
ರೈದುದೆನೆ ಹೊಯ್ದಾಡಿದರು ಕಲಿಭೀಮ ಕೌರವರು ೩೫

ಎಲೆಲೆ ಹಿಡಿ ಹಿಡಿ ಭೀಮನನು ತೆಗೆ
ಕೆಲಕೆ ದುರ್ಯೋಧನನಿದು ಮಂ
ಗಳದ ಬೆಳಗಿಂಗಳಿನ ಮಳೆ ಸುರಿದುದೆ ಮಹಾದೇವ
ಕಳವಳಿಸೆ ಭೀಷ್ಮಾದಿಗಳು ನೃಪ
ತಿಲಕರಿಬ್ಬರ ನಡುವೆ ಹಾಯ್ದರು
ಕುಲಗಿರಿಗಳಂದದಲಿ ಕೃಪ ಗುರುಸುತರು ವಹಿಲದಲಿ ೩೬

ತೆಗೆದರೀತನನಿತ್ತಲಾತನ
ನುಗಿದರತ್ತಲು ಜನದ ಗಳದಿಂ
ದೊಗೆದ ಗಾಢದ ಗಜಬಜವ ಧಟ್ಟಿಸಿದರಲ್ಲಲ್ಲಿ
ಬೆಗಡು ಮೊಳೆತುದು ಭೀಷ್ಮ ವಿದುರಾ
ದಿಗಳ ಮನದಲಿ ಮೇಲೆ ಹಬ್ಬುವ
ಹಗೆಗಿದುಪಲಕ್ಷಣವಲಾಯೆಂದುದು ಬುಧವ್ರಾತ ೩೭

ಅಳಿಮಸಗಿದಂಬುಜದವೋಲ್ ಜನ
ಜಲಧಿ ಜಾತ ಕ್ಷೋಭೆಯಲಿ ವೆ
ಗ್ಗಳಿಸಿತಗ್ಗದ ಸಾಧು ವಾದವಿವಾದ ರಭಸದಲಿ
ಮೊಳಗಿದವು ಕಲ್ಪಾಂತ ಮೇಘಾ
ವಳಿಯ ಗುರುವೆನೆ ವಾದ್ಯತತಿ ಕಳ
ಕಳದೊಳರ್ಜುನ ದೇವನೆದ್ದನು ಮುನಿಯ ಸನ್ನೆಯಲಿ ೩೮

ಈತನಾರರ್ಜುನನೆ ಹೋ ಹೋ
ಮಾತು ಮಾಣಲಿ ಮಾಣಲೆಂಬೀ
ಮಾತು ಹಿಂಚಿತು ಮುನ್ನ ಮೌನದೊಳಿರ್ದುದಾಸ್ಥಾನ
ಭೀತ ಕಳಕಳ ರಂಗದಲಿ ಪುರು
ಹೂತಸುತ ಮೈದೋರಿದನು ಜನ
ವೀತನನು ಕೊಂಡಾಡುತಿರ್ದುದು ರಾಯ ಕೇಳೆಂದ ೩೯

ದ್ರೋಣ ಕೃಪ ಮೊದಲಾದ ಮಾನ್ಯ
ಶ್ರೇಣಿಗೆರಗಿದನಮರ ನಿಕರಕೆ
ಗೋಣನೆತ್ತಿದನಿಟ್ಟು ಕರಪುಟವನು ಲಲಾಟದಲಿ
ಪ್ರಾಣ ಪಣವಿದು ನಿಖಿಳ ವಿದ್ಯದ
ಜಾಣತನವಿದು ವಿನಯವೆಂದಿದು
ಕೇಣವಿಲ್ಲದೆ ನೆರವಿ ನೆರೆ ಹೊಗಳಿತು ಧನಂಜಯನ ೪೦

ನಿಲುವಿನಲಿ ಸ್ವಸ್ಥಾನದಲಿ ಕೈ
ಚಳಕದಲಿ ಭಂಗಿಯಲಿ ಭರದಲಿ
ಉಳಿಯಲೊಯ್ಯಾರದಲಿ ಮೋಡಾಮೋಡಿಯಂದದಲಿ
ಅಳವಿಯಲಿ ಪರಿವಿಡಿಯಲೂಹಾ
ಬಲದಲವಧಾನದಲಿ ಶಸ್ತ್ರಾ
ವಳಿಯ ಸಾಂಗೋಪಾಂಗ ಶ್ರಮವನು ತೋರಿದನು ಪಾರ್ಥ ೪೧

ತುರಗಚಯ ರೇವಂತ ಮದ ಕುಂ
ಜರ ಮಹಾ ದಿವಿಜೇಂದ್ರ ಪಥ ಸಂ
ಚರಣ ವರ ಮಾರ್ತಾಂಡಯೆಂದಬ್ಬರಿಸೆ ಜನ ನಿಕರ
ತುರಗ ಗಜ ರಥ ವಿವಿಧ ಶಿಕ್ಷಾ
ಪರಿಣತಿಯ ತೋರಿದನು ಗುರು ಕೃಪ
ಸುರನದೀಜರು ಮುಳುಗಿದರು ಪುಳಕಾಂಬು ಪೂರದಲಿ ೪೨

ಮತ್ತೆ ಕೊಂಡನು ಧನುವ ನೆರವಿಯು
ನತ್ತ ಹೊಯ್ ಹೊಯ್ ಹೋಗ ಹೇಳ್ ದುರ್
ವೃತ್ತರೆದೆ ಜರ್ಝರಿತವಾಗಲು ತೋರಬೇಕೆನುತ
ಬತ್ತಳಿಕೆಯಿಂದುಗಿದು ಹೂಡಿ ವಿ
ಯತ್ತಳಕೆ ಹಾಯ್ಸಿದನು ಕರ್ಬೊಗೆ
ಸುತ್ತಿ ದಳ್ಳುರಿ ಸುರಿದುದಾಗ್ನೇಯಾಸ್ತ್ರ ಧಾರೆಯಲಿ ೪೩

ತೆಗೆಸಿದನು ಶಿಖಿಶರವ ಧನುವಿಂ
ದುಗಿಸಿದನು ವಾರುಣವನಭ್ರವ
ಮೊಗೆದುದದ್ಭುತ ವಾರಿಯುಪಸಂಹರಿಸಿದನು ಮರಳಿ
ಹಗಲನೊಂದೇ ತುತ್ತು ಮಾಡಿದ
ವಿಗಡ ತಿಮಿರಾಸ್ತ್ರದಲಿ ತಿಮಿರವ
ತೆಗೆಸಿದನು ಸೂರ್ಯಾಸ್ತ್ರದಲಿ ಬೆರಗಾಗೆ ಸುರನಿಕರ ೪೪

ಗಿರಿಶರದಲದ್ರಿಗಳ ಮೇಘದ
ಶರದಿನಭ್ರವನುರಗ ಬಾಣದಿ
ನುರು ಭುಜಂಗವನನಿಲ ಶರದಲಿ ತೀವ್ರ ಮಾರುತನ
ಪರುಠವವ ತೋರಿದನು ಜನವು
ಬ್ಬರಿಸಲಡಿಗಡಿಗಂಧ ಭೂಪನ
ಕೊರಳು ಕುಸಿದುದು ನುಡಿಯ ನಾಟಕ ಹರ್ಷಭಾರದಲಿ ೪೫

ಇವರ ಮುಖವರಳಿದವು ಗಂಗಾ
ಭವ ಕೃಪ ದ್ರೋಣಾದಿಗಳ ಬಳಿ
ಕವರ ತಲೆವಾಗಿದವು ಧೃತರಾಷ್ಟ್ರಾದಿ ಕೌರವರ
ಇವರ ಜನನಿಯು ಮುಖದ ಸುಷ್ಮಾ
ನವನು ದುರ್ಯೋಧನನ ಜನನಿಯ
ಜವಳಿ ದುಷ್ಮಾನವನು ಬಣ್ಣಿಸಲರಿಯೆ ನಾನೆಂದ ೪೬

ಬಾಯ ಹೊಯ್ ಫಲುಗುಣನ ಹೊಗಳುವ
ನಾಯಿಗಳನೇನಾಯ್ತು ಕೌತುಕ
ವಾಯಕಿವದಿರ ಪಕ್ಷಪಾತವ ನೋಡು ನೋಡೆನುತ
ಸಾಯಕವ ತಿರುಹುತ್ತಲಾ ಕ
ರ್ಣಾಯತಾಂಬಕನೆಡಬಲದ ಕುರು
ರಾಯನನುಜರ ಮೇಳದಲಿ ಹೊರವಂಟನಾ ಕರ್ಣ ೪೭

ಗುರುಗಳಿಗೆ ಕೈಮುಗಿದು ಶಿರದಲಿ
ತರಣಿ ಮಂಡಲಕೆರಗಿ ನೋಡುವ
ನೆರವಿಗಿವನಾರೀತನಾರೆಂಬದ್ಭುತವ ಬೀರಿ
ಅರಸ ಕೇಳೈ ವಿವಿಧ ಶಸ್ತ್ರೋ
ತ್ಕರದ ಶ್ರಮವನು ತೋರಿದನು ಕರಿ
ತುರಗ ರಥ ವಾಹನದ ಶಿಕ್ಷಾ ವಿದ್ಯಗಳು ಸಹಿತ ೪೮

ಆವ ವಿಧದಲಿ ಪಾರ್ಥ ತೋರಿದ
ನಾವ ದಿವ್ಯಾಸ್ತ್ರಪ್ರಪಂಚವ
ಪಾವಕಾನಿಲ ವಾರುಣಾದಿಯನೈದೆ ವಿರಚಿಸಿದ
ಆ ವಿಧಾನದಲಾ ವಿಹಾರದ
ಲಾ ವಿಬಂಧದಲರ್ಜುನನ ಬಾ
ಣಾವಳಿಯ ಬಿನ್ನಾಣವನು ತೋರಿದನು ಕಲಿಕರ್ಣ ೪೯

ಸೆಣಸುವಡೆ ಬಾಯೆಂದು ಪಾರ್ಥನ
ಕೆಣಕಿದನು ಘನ ರೋಷ ಶಿಖಿಯಲಿ
ಕುಣಿದವಿಬ್ಬರ ಮೀಸೆ ಕಂಗಳೊಳೊಗುವ ಕೆಂಪಿನಲಿ
ಕಣೆ ಕಣೆಗಳಾಟದಲಿ ಶರ ಖಂ
ಡಣೆಯ ಕೋಲಾಟದಲಿ ಖಣಿ ಖಣಿ
ಖಣಿಲು ಖಣಿ ಖಣಿ ಮಸಗಲೆಚ್ಚಾಡಿದರು ಚಳಕದಲಿ ೫೦

ರಾಯಸಭೆ ಕಳವಳಿಸೆ ಹೋ ಹೋ
ಹೋಯಿದೇನೇನೆನುತ ಹಿಡಿದರು
ವಾಯುಸುತಕೃಪ ಗುರುಜ ದ್ರೋಣಾದ್ಯರು ಧನಂಜಯನ
ಆಯಿತೆಲವೋ ಕರ್ಣ ನೀನನು
ನಾಯಕನೊ ನೃಪಹಾರದಲಿ ಮೇಣ್
ನಾಯಕನೊ ನೀನಾವನೆಂದನು ಕೃಪನು ಖಾತಿಯಲಿ ೫೧

ಈತನಾವನು ಕರ್ಣನೆಂಬವ
ನೀತನರ್ಜುನನೊಡನೆ ತಾ ಮಾ
ರಾತು ಕೈಮಾಡಿದನು ಕೈಕೊಳ್ಳನು ಧನಂಜಯನ
ಈತ ತಪ್ಪಲ್ಲೆನುತ ಮಿಗೆ ಮೈ
ಯಾತನಾ ಧೃತರಾಷ್ಟ್ರನೀತನ
ಮಾತೆ ಕಂಡಳು ಕುಂತಿ ನೆನೆದಳು ಪೂರ್ವಸಂಗತಿಯ ೫೨

ಎನ್ನ ಮಗನೆನೆ ಬಂದುದಿಲ್ಲದು
ತನ್ನ ವಶವೇ ವಿಷ್ಣುಮಾಯೆಯು
ಬಿನ್ನಣವಲೇ ಮಾತು ಬಿಗಿದುದು ಮನವನೊಳಗಿಕ್ಕಿ
ತನ್ನ ತಾನೇ ಮರುಗಿ ಮೂರ್ಛಾ
ಪನ್ನೆಯಾದಳು ಕುಂತಿಯಿತ್ತಲು
ಖಿನ್ನನಾದನು ಕೃಪನ ನುಡಿಯಲಿ ದುಗುಡ ಮಿಗೆ ಕರ್ಣ ೫೩

ಈತನರಸಲ್ಲೆಂದು ಕೃಪ ಪಳಿ
ವಾತನೇ ತಪ್ಪೇನು ರಾಜ್ಯದೊ
ಳಾತನರಸೆನಿಸುವೆನು ಕರೆ ನಮ್ಮಯ ಪುರೋಹಿತರ
ಶಾತಕುಂಭಾಸನವ ಮಂಗಳ
ಜಾತ ವಸ್ತುವ ತರಿಸು ತರಿಸೆಂ
ದಾ ತತುಕ್ಷಣದಲಿ ಸುಯೋಧನನೆದ್ದ ರಭಸದಲಿ ೫೪

ತರಿಸಿ ಭದ್ರಾಸನದೊಳೀತಂ
ಗರಸು ಪದವಿಯೊಳಂಗ ದೇಶದ
ಸಿರಿಯನಿತ್ತನು ರಚಿಸಿದನು ಮೂರ್ಧಾಭಿಷೇಚನವ
ದರುಶನವನಿತ್ತಖಿಳ ಭೂಮಿ
ಶ್ವರರು ಕಂಡರು ಪೂರ್ವ ಶೈಲದ
ತರಣಿಯಂತಿರೆ ಕರ್ಣನೆಸೆದನು ರಾಜತೇಜದಲಿ ೫೫

ಈತನುತ್ಸವ ತನ್ನದೆಂದೇ
ಪ್ರೀತಿಯಲಿ ಬರೆ ಸಿಂಹಪೀಠವ
ನೀತನಿಳಿದೆರಗಿದನು ಪದದಲಿ ಬಳಿಕ ಜನಜನಿತ
ಸೂತಸುತನಿವನೆಂದು ಭುವನ
ಖ್ಯಾತವಾದುದು ಬಳಿಕ ನಸುನಗು
ತೀತನನು ಕುಲವೆತ್ತಿ ಭಂಗಿಸಿ ನುಡಿದನಾ ಭೀಮ ೫೬

ಇವನ ತಂದೆಯುದಾರು ಪಾಂಡುವೊ
ಪವನನೋ ಕೃಪ ನಿಮ್ಮ ಜನ್ಮವ
ನೆವಗೆ ಹೇಳಿರೆ ಹಿರಿಯ ಗುರುಗಳ ತಾಯದಾವವಳೊ
ಅವಘಡಿಸದಿರಿ ಹಿರಿಯತನಕಂ
ಜುವೆನು ನಿಮಗೆನುತಡಿಗಡಿಗೆ ಕೌ
ರವ ಮಹೀಪತಿ ಜರಿದು ನುಡಿದನು ಗುರು ಕೃಪಾದಿಗಳ ೫೭

ಒಳಗೆ ಗಜಬಜವಾಯ್ತು ಕೈದುವ
ಸೆಳೆದುದಲ್ಲಿಯದಲ್ಲಿ ಗುರು ಕೃಪ
ರುಲುಹ ಕೇಳುವರಿಲ್ಲ ಕೈದೊಳಸಾಯ್ತು ಕಳನೊಳಗೆ
ಇಳಿದು ಭೀಷ್ಮಾದಿಗಳು ತಮ್ಮಯ
ನಿಳಯಕೈದಿದರೆರಡು ಬಲ ತ
ಮ್ಮೊಳಗೆ ತಾವೇ ಹಣಿದು ಹರಿದುದು ರಾಯ ಕೇಳೆಂದ ೫೮

ಕೆಲರು ಭೀಮನನರ್ಜುನನ ಕೆಲ
ಕೆಲರು ಕರ್ಣನ ಕೌರವೇಂದ್ರನ
ಕೆಲರು ಹೊಗಳುತ ಬಂದು ಹೊಕ್ಕರು ಹಸ್ತಿನಾಪುರವ
ಬಳಿಕಲಾ ಮರುದಿವಸದಲಿ ಮ
ಕ್ಕಳುಗಳೆಲ್ಲರ ಕರೆಸಿ ಗರುಡಿಯ
ನಿಳಯದಲಿ ಕುಳ್ಳಿರ್ದು ಗುರು ನುಡಿದನು ಕುಮಾರರಿಗೆ ೫೯

ಏನಿರೈ ಕುರುವಂಶನಳಿನೀ
ಭಾನುಗಳಿರ ವಿದಗ್ಧ ಜನ ಸುರ
ಧೇನುಗಳಿರಾವಿಂದು ನಿಮ್ಮಲಿ ದಕ್ಷಿಣಾರ್ಥಿಗಳು
ಏನನೀವಿರಿ ನಮಗೆ ಕೊಡೆ ಸಂ
ಪೂರ್ಣರೈ ಕೊಡಲಾಪ ಸತ್ವ ನಿ
ಧಾನವುಂಟೇ ಹೇಳಿಯೆಂದನು ದ್ರೋಣನನಿಬರಿಗೆ ೬೦

ಆವುದನು ಬಯಸುವಿರಿ ನಿಮ್ಮಡಿ
ಯಾವ ಕಾರ್ಯವ ಬೆಸಸಿದುದ ತಂ
ದೀವೆವಿದಕೆ ವಿಚಾರವೇನೆಂದರು ಕುಮಾರಕರು
ಶ್ರೀವಿದಗ್ಧದ ಹರುಷರಸದಲಿ
ಭಾವ ನೆನೆದುದು ಮುನಿಗೆ ವರ ಶಿ
ಷ್ಯಾವಳಿಗೆ ನುಡಿದನು ನಿಜಾಭಿಪ್ರಾಯ ಸಂಗತಿಯ ೬೧

ಕೇಳಿ ಬಲ್ಲಿರೆ ಗಂಗೆಯುತ್ತರ
ಕೂಲದಲಿ ಪಾಂಚಾಲದೇಶ ನೃ
ಪಾಲನಲ್ಲಿಗೆ ದ್ರುಪದನೆಂಬವನತುಳ ಭುಜಬಲನು
ಆಳುತನದಂಗದಲಿ ಪರರಿಗೆ
ಸೋಲನವನೊಟ್ಟೈಸಿ ದ್ರುಪದ ನೃ
ಪಾಲಕನ ಪಿಡಿದೊಪ್ಪಿಸಿದರೆಮಗಹುದು ಪರಿತೋಷ ೬೨

ಐಸಲೇ ಗುರುದಕ್ಷಿಣಾರ್ಥವಿ
ದೇಸು ಘನ ತಂದೀವೆವೆಂದುಪ
ಹಾಸದಲಿ ಕೈವೊಯ್ದು ತಮ್ಮೊಳು ನಗುತ ಕೌರವರು
ಆ ಸುಯೋಧನ ಕರ್ಣಸಹಿತ ಮ
ಹೀಶ ತನುಜರು ಬೀಳುಕೊಂಡರು
ವಾಸಿ ಬಿದ್ದುದು ಪಾಂಡುಸುತ ಕೌರವ ಕುಮಾರರಿಗೆ ೬೩

ಧಾಳಿಯಿಟ್ಟುದು ರಾಯದಳ ಪಾಂ
ಚಾಲದೇಶಕೆ ಮುಂದೆ ಹೊಕ್ಕುದು
ಚೂಳಿಕೆಯಲಿ ಸುಯೋಧನಾದಿಗಳೂರನುರವಣಿಸಿ
ಧೂಳಿಗೋಟೆಯ ಕೊಂಡಿವರು ರಾ
ಜಾಲಯಕೆ ಬರೆ ದ್ರುಪದನನುಜರು
ಸೋಲಿಸಿದರೈ ಕೌರವೇಂದ್ರನ ಬಲವ ಬರಿಕೈದು ೬೪

ಪುರದ ಹೊರ ಬಾಹೆಯಲಿ ತಾವೈ
ವರು ಮಹಾ ಸನ್ನಾಹ ಚಾಪ
ಸ್ಫುರಿತ ತೂಣೀಬದ್ಧ ಕಂಪಿತ ಖಡ್ಗ ಪಾಣಿಗಳು
ಗುರು ಸಹಿತಲಿವರಿದ್ದ ರಿತ್ತಲು
ಪುರಜನಂಗಳ ಮುಸಲ ಹತಿಯಲಿ
ಮುರಿದು ಬಂದುದು ಕೌರವೇಂದ್ರನ ದಳ ವಿಘಾತಿಯಲಿ ೬೫

ಆತು ಕೊಂಡರು ಪಾಂಡು ಸುತರಭಿ
ಜಾತ ಸಮರವನಿವರ ಕೈಯಲಿ
ಮಾತು ಹಲವಿಲ್ಲೆನುತ ಹೊಕ್ಕರು ಕೊಂದು ಪರಬಲವ
ಘಾತಿಗಾನುವರಿಲ್ಲ ದೊರೆಯನು
ತಾತನನು ಮುತ್ತಿದರು ಗುರುಗಳಿ
ಗೀತನೇ ದಕ್ಷಿಣೆಯೆನುತ ಹಿಡಿದರು ಮಹೀಪತಿಯ ೬೬

ಕೊಂಡು ಬಂದರು ದ್ರೋಣನಿದಿರಲಿ
ದಿಂಡುಗೆಡಹಿದರೀತನನು ಕೈ
ಕೊಂಡನೆಲವೋ ದ್ರುಪದ ಸಖ ಪೂರ್ವವನು ನೆನೆಯೆನುತ
ಭಂಡನಿವನನು ಸಾಕು ಬಿಡಿ ಸಲೆ
ಚಂಡಿಯಾದನು ದರ್ಪ ವಿಷ ಮುಂ
ಕೊಂಡು ಮೂರ್ಛಿತನೇನ ಮಾಡುವೆನೆಂದನಾ ದ್ರೋಣ ೧೬

ಎಲವೊ ಕೊಟ್ಟೆನು ಜೀವದಾನವ
ನಳಲು ನಿನಗೇಕಿನಿತು ಸಾಹಸ
ದಳವಿಯಲಿ ನೀ ನೆರಹು ಹಗೆಯನು ಭಂಡ ಹೋಗೆಂದು
ಕಳೆದು ಕೊಟ್ಟೆನು ನಿನ್ನ ರಾಜ್ಯದ
ನೆಲದೊಳರ್ಧವನಿತ್ತು ನೀ ನಡೆ
ಬಳಿಕಲೆಂದೊಡಬಡಿಸಿ ದ್ರುಪದನ ಬಿಟ್ಟನಾ ದ್ರೋಣ ೧೭

ಅರಸ ಕೇಳೈ ದ್ರುಪದನೀ ಪರಿ
ಪರಿಭವಕೆ ಗುರಿಯಾಗಿ ತನ್ನಯ
ಪುರವ ಹೊಗದೈತಂದು ಗಂಗಾತೀರ ದೇಶದಲಿ
ಧರಣಿಸುರರಲಿ ಪುತ್ರಕಾಮ್ಯಾ
ಧ್ವರವ ವಿರಚಿಸಲಾಗ ಸತ್ವೋ
ತ್ಕರುಷವಂತರನರಸಿದನು ನಾನಾಗ್ರಹಾರದಲಿ ೧೮

ದ್ರೋಣ ಭಯದಲಿ ಸಕಲ ವಿಪ್ರ
ಶ್ರೇಣಿಯಿರೆ ಯಾಜೋಪಯಾಜರು
ಪ್ರಾಣನಿಸ್ಪೃಹರಾಗಿ ಮಾಡಿಸಿದರು ಮಹಾಕ್ರತುವ
ಕೇಣವಳಿದಾಹುತಿಯನಮರರ
ಬಾಣಸಿಗಗುಣಬಡಿಸೆ ದೇವ
ಶ್ರೇಣಿ ದಣಿದುದು ಸಲಿಸಿದರು ಪಾಂಚಾಲನಭಿಮತವ ೨೦

ಅರಸ ಕೇಳೈ ಕುಂಡ ಮಧ್ಯದೊ
ಳುರಿಯ ಕರುವಿಟ್ಟೆರಕಿದರೊ ಭಾ
ಸುರ ಮಹಾನಲನಪರ ರೂಪೋ ತಾನಿದೇನೆನಲು
ಶರವಡಾಯುಧ ಚಾಪ ವರ್ಮೋ
ತ್ಕರಸಹಿತ ರೌದ್ರಾಂಗನಾಗವ
ತರಿಸಿದನು ಪಾಂಚಾಲ ಭೂಪತಿ ಭುಜವ ಸೂಳೈಸೆ ೨೧

ವೇದಿ ಮಧ್ಯವನೊಡೆದು ಮೂಡಿದ
ಳಾದರಿಸೆ ಜನವಮುಮ ಕಾಮನ
ಕೈದುವೋ ತ್ರೈಲೋಕ್ಯ ಮೋಹನ ಮಂತ್ರ ದೇವತೆಯೊ
ಕಾದುವರೆ ಕರೆ ಹರಿ ಹರ ಬ್ರ
ಹ್ಮಾದಿಗಳಿಗೊರೆಯೆಂಬ ಹೂಂಕೃತಿ
ಯಾದುದಾ ಕಾಮಂಗೆ ದ್ರುಪದಾತ್ಮಜೆಯ ಜನನದಲಿ ೨೨

ದ್ರೋಣವಧೆಗೀ ಮಗನು ಪಾರ್ಥಗೆ
ರಾಣಿಯಿೀ ಮಗಳೆಂದು ದ್ರುಪದ
ಕ್ಷೋಣಿಪತಿ ಸಲಹಿದನು ಸುತರನು ಸಾನುರಾಗದಲಿ
ದ್ರೋಣನೀತನ ಕರೆಸಿ ಶಸ್ತ್ರದ
ಜಾಣಿಕೆಯ ಕಲಿಸಿದನು ವಿಗಡರ
ಕಾಣೆನೀ ಕಲಶಜನ ಪರಿಯಲಿ ರಾಯ ಕೇಳೆಂದ ೨೩

ಮಗನು ಧೃಷ್ಟದ್ಯುಮ್ನ ದ್ರೌಪದಿ
ಮಗಳು ಭಾರದ್ವಾಜನೆತ್ತಿದ
ಹಗೆಗೆ ಹರುವಾಯ್ತೆನುತ ಹಿಗ್ಗಿದ ದ್ರುಪದ ಭೂಪಾಲ
ದುಗುಡದಲಿ ಕುರು ರಾಯನೀ ದಾ
ಯಿಗರ ಬಿರಿದಿನ ಬಿಂಕದಂಕೆಯ
ಬಿಗಿದ ಪರಿಯನು ನೆನೆದು ಮರುಗಿದನರಸ ಕೇಳೆಂದ ೨೪

ಎಂಟನೆಯ ಸಂಧಿ

ಸೂ. ವಾಯುಸುತನುರಿಮನೆಯ ಕೌರವ
ರಾಯ ಕೃತಕವ ಕಳೆದು ಹೊಕ್ಕನು
ತಾಯಿ ಪೊಡಹುಟ್ಟಿದರು ಸಹಿತ ಮಹಾ ವನಾಂತರವ

ಕೇಳು ಜನಮೇಜಯ ಧರಿತ್ರೀ
ಪಾಲ ಗಜನಗರಿಯಲಿ ಕೌರವ
ರಾಳ ಪಾಂಡವರಾಳ ಸೆಣಸಿನ ಕಾಲು ಮೆಟ್ಟುಗಳ
ಸೂಳು ಮತ್ಸರ ಬಿರುದು ಪಾಡಿನ
ಚೂಳಿಗಲಹದ ಕದಡು ಜೂಜಿನ
ತೋಳುವಲರೊಳತೋಟಿ ಮಸಗಿತು ದಿವಸ ದಿವಸದಲಿ ೧

ಬೀದಿಗಲಹದ ಕದಡು ಬೀಡಿನ
ಲೈದೆ ಹಬ್ಬಿತು ಬೀಡುಗಲಹದ
ಕೈದೊಳಸು ಕೊಂಡೆಸಗಿ ನಟಿಸಿತು ನಾಡು ನಾಡಿನಲಿ
ಆದುದೆರಡರಸಿಭಪುರಿಗೆ ಕಾ
ಳಾದುದಿನ್ನೇನೆಂದು ಪುರಜನ
ವೈದೆ ಹೆದರಿತು ಭೀಮ ದುರ್ಯೋಧನರ ಹೋರಟೆಗೆ ೨

ಬೇರೆ ಪಾಂಡವರಿರಲಿ ರಾಯನ
ನೂರು ಮಕ್ಕಳು ಪುರವನಾಳಲಿ
ಬೇರೆ ಕೌರವರಿರಲಿ ಪಾಂಡವರಾಳಲಿಭ ಪುರಿಯ
ನೂರರೊಡನೈವರನು ಧರಿಸಿರ
ಲಾರದೀ ಪುರಿಯೆನುತ ದುಗುಡವ
ಹೇರಿ ಹೊದಕುಳಿಗೊಳುತಲಿರ್ದುದು ಹಸ್ತಿನಾನಗರ ೩

ಒಂದು ದಿವಸ ಸುಯೋಧನನು ನಿಜ
ಮಂದಿರದೊಳೇಕಾಂತದಲಿ ಮನ
ನೊಂದು ನುಡಿದನು ಶಕುನಿ ಕರ್ಣ ಜಯದ್ರಥಾದ್ಯರಿಗೆ
ಅಂದು ಭೀಮಾರ್ಜುನರು ದ್ರುಪದನ
ತಂದು ದಕ್ಷಿಣೆಯಿತ್ತು ಗುರುವಿಗೆ
ಸಂದರೈ ಸಮರದಲಿ ಪರಿಭವವಾಯ್ತು ತಮಗೆಂದ ೪

ವನಜ ವನದಲಿ ತುರುಚಿ ಕಬ್ಬಿನ
ಬನದಿ ಕಡಸಿಗೆ ಚೂತಮಯ ಕಾ
ನನದಿ ಬೊಬ್ಬುಲಿ ಭೀಮಸೇನನಯಿರವು ತಮ್ಮೊಳಗೆ
ಇನಿತು ಪಾರ್ಥನ ಮೇಲೆ ಯಮಳರ
ಜಿನುಗಿನಲಿ ಜಾರೆನು ಯುಧಿಷ್ಠಿರ
ಜನಪನಾಗಲಿ ಮೇಣು ಮಾಣಲಿ ಭೀತಿಯಿಲ್ಲೆಂದ ೫

ಹುದು ನಡೆಯದಿವರೊಡನೆ ನಮ್ಮಲಿ
ಕದನವೇ ಕೈಗಟ್ಟುವುದು ಕಾ
ದಿದೊಡೆ ಹೆಬ್ಬಲವಹುದು ದುರ್ಬಲ ದೈವಗತಿ ಬೇರೆ
ನದಿಗಳರಳೆಯ ಹಾಸು ನವ ವಿಷ
ವುದರ ದೀಪನ ಚೂರ್ಣವಾವಂ
ಗದಲಿ ಸಾಪತ್ನರಲಿ ಸದರವ ಕಾಣೆ ತಾನೆಂದ ೬

ದುಗುಂಡವೇತಕೆ ಜೀಯ ಡೊಂಬಿನ
ಜಗಳವನು ತೆಗೆದರಿನ್ನಪರ ಸುಂ
ಟಗೆಯುನಾಯ್ಸುವೆನವರ ತನುವನು ಯುದ್ಧರಂಗದಲಿ
ದಿಗುಬಲಿಯ ಕೊಡಿಸುವೆನು ಸಾಕಿ
ನ್ನೊಗುಮಿಗೆಯ ಚಿಂತಾಂಗನೆಯನೋ
ಲಗಿಸದಿರು ಕುರುರಾಯ ಚಿತ್ತೈಸೆಂದನಾ ಕರ್ಣ ೭

ಹೊಡೆದು ಹೊಡೆ ಚೆಂಡಾಡಿ ರಿಪುಗಳ
ಗಡಣವನು ಯಮರಾಜಧಾನಿಗೆ
ನಡೆಸುವೆನು ನೀ ನೋಡುತಿರು ಸಾಕೊಂದು ನಿಮಿಷದಲಿ
ಕೊಡು ತನಗೆ ನೇಮವನು ದುಗುಡವ
ಬಿಡು ಮನಸ್ಸಿನ ಕಂದು ಕುಂದನು
ಹಿಡಿಯದಿರು ಕುರುರಾಯ ಚಿತ್ತೈಸೆಂದನಾ ಕರ್ಣ ೮

ಹಬ್ಬುಗೆಯ ಹದಿನಾಲ್ಕು ಲೋಕದ
ಮೊಬ್ಬುಗಳನೀಡಾಡಿ ನಭದೊಳ
ಗೊಬ್ಬನೇ ರವಿ ತೊಳಗಿ ಬೆಳಗುವವೋಲು ಪಾಂಡವರ
ಕೊಬ್ಬುಗಳ ನಿಲಿಸುವೆನು ಧರೆಯೊಳ
ಗೊಬ್ಬನೇ ದುರ್ಯೋಧನನು ಮ
ತ್ತೊಬ್ಬರಿಲ್ಲೆಂದೆನಿಸಿ ತೋರುವೆನೆಂದನಾ ಕರ್ಣ ೯

ವಿದುರ ಭೀಷ್ಮಾದಿಗಳು ನಿನ್ನಯ
ಸದನದೊಳಗುಂಡುಟ್ಟು ಪರರ
ಭ್ಯುದಯವನೆ ಬಯಸುವರು ದೂರುವರೆಮ್ಮನವರುಗಳ
ಹದನ ನೀನೇ ಬಲ್ಲೆ ಸಾಕಿ
ನ್ನದರ ಮಾತೇಕರಸ ತನ್ನಯ
ಕದನವನು ಚಿತ್ತೈಸು ಸಾಕಿನ್ನೆಂದನಾ ಕರ್ಣ ೧೦

ಸಹಜವೀ ನುಡಿ ಕರ್ಣನಾಡಿದ
ನಹುದು ಪಾಂಡವರೆಂಬವರು ಕಡು
ಸಹಸಿಗಳು ಗೆಲಲರಿದು ಕುಹಕೋಪಾಯ ಮಾರ್ಗದಲಿ
ಅಹಿತರನು ಗೆಲಬಹುದು ಪರಿಕರ
ಸಹಿತವರುಗಳ ನಿಮ್ಮ ಚಿತ್ತಕೆ
ಬಹರೆ ತನ್ನಭಿಮತವನವಧರಿಸೆಂದನಾ ಶಕುನಿ ೧೧

ಐದು ಮುಖವೀರೈದು ಭುಜ ಹದಿ
ನೈದು ಕಂಗಳ ವಿಗಡ ರುದ್ರನು
ಮೇದಿನಿಯ ಮೇಲೊಂದು ಶಿರ ಭುಜವೆರಡನಳವಡಿಸಿ
ಆದಿಪುರುಷನು ಭೀಮ ಪೆಸರಿನ
ಲೈದೆ ಜನಿಸಿದನಾತನಿದಿರಲಿ
ಕೈದುಕಾರನದಾವನೈ ಹೇಳೆಂದನಾ ಶಕುನಿ ೧೨

ಅರಸ ಕೇಳ್ಬಲು ವಿದ್ಯದಲಿ ಮೂ
ವರು ಕಣಾ ಸಾಮರ್ಥ್ಯ ಪುರುಷರು
ಧರೆಯೊಳೊಬ್ಬರಿಗೊಂದು ಗುಣ ಪಾರ್ಥಂಗೆ ಮೂರು ಗುಣ
ಭರಿತವಾಗಿಹುದಾತನೊಬ್ಬನ
ಸರಿಸದಲಿ ಮಾರಾಂತು ಜೀವಿಸಿ
ಮರಳ ಬಲ್ಲವನಾವನೈ ಹೇಳೆಂದನಾ ಶಕುನಿ ೧೩

ರಾಮಚಂದ್ರನ ಚರಣಯುಗ ನಿ
ಸ್ಸೀಮ ಭೀಷ್ಮಾಚಾರಿಯರ ಶಿರ
ವಾ ಮಹಾರಥ ದ್ರೋಣನೆದೆ ನಡುಗುವುದು ಸಮರದಲಿ
ಸೌಮನಸ್ಯನು ನಿಷ್ಪ್ರಕಂಪ ಸ
ನಾಮನರ್ಜುನ ದೇವನಿದಿರಲಿ
ಭೂಮಿಯಲಿ ಬಿಲ್ಲಾಳದಾವವನೆಂದನಾ ಶಕುನಿ ೧೪

ಶತ್ರುಗಳ ಸಂಹರಿಸಿ ರಾಜ್ಯವ
ನೊತ್ತಿಯಾಳುವೆನೆಂಬ ಸಾಹಸ
ಸತ್ವಗುಣ ನಿನಗಿಲ್ಲ ಪಾಂಡವರತುಲ ಭುಜಬಲರು
ಕೃತ್ರಿಮದ ಮುಖದಿಂದ ರಿಪುಗಳ
ಕಿತ್ತು ಹಾಯಿಕಿ ನೆಲನನೇಕ
ಚ್ಛತ್ರದಲಿ ಸಲಹುವುದು ಮತ ಕೇಳೆಂದನಾ ಶಕುನಿ ೧೫

ಸೋದರರು ನೀವು ನಿಮ್ಮೊಳು
ಭೇದಮಂತ್ರವ ಮಾಡುವುದು ಮ
ರ್ಯಾದೆಯೇ ನಾವ್ ನಿಮ್ಮಡಿಯಲರಮನೆಯ ಸೇವಕರು
ವಾದಿಸುವರಿತ್ತಂಡ ಸರಿ ನಮ
ಗಾದರೆಯು ಕಂಡುದ ನುಡಿಯ ಬೇ
ಕಾದಿರಿಸು ಮೇಣ್ ಮಾಣು ಬಿನ್ನಹವೆಂದನಾ ಶಕುನಿ ೧೬

ಪಕ್ಷವೆರಡೇ ಲೋಕದೊಳ್ ಪಿತೃ
ಪಕ್ಷ ಮೇಣಾ ಮಾತೃಪಕ್ಷ ವಿ
ಪಕ್ಷ ತಂದೆಯ ದೆಸೆ ಸಪಕ್ಷವು ತಾಯ ದೆಸೆಯವರು
ತಕ್ಷಕನ ತೆರನಂತೆ ನಿಮ್ಮನು
ಭಕ್ಷಿಸುವರಾವಂಗದಲಿ ನೀ
ನೀಕ್ಷಿಸುವುದೈ ಪಾಂಡು ಪುತ್ರರನೆಂದನಾ ಶಕುನಿ ೧೭

ಮೊಳೆಯಲೇ ಮುರುಡಿಸಲು ಬೇಹುದು
ಬಲಿದ ಬಳಿಕದು ನಿನ್ನ ಹವಣೇ
ಇಳೆಯೊಳರ್ಥವನಿತ್ತು ರಿಪುಗಳ ಹೆಚ್ಚಿಸಿದ ಬಳಿಕ
ಗೆಲುವನಾವನು ದೇವ ದಾನವ
ರೊಳಗೆ ಭೀಮಾರ್ಜುನರ ಕೈ ಮನ
ದಳವನರಿಯಾ ಭಾರವೈ ಮೇಲೆಂದನಾ ಶಕುನಿ ೧೮

ಧಾರುಣಿಯೊಳು ಪಿಪೀಲಿಕೆಯು ವಿ
ಸ್ತಾರದಲಿ ಮಾಡಿದ ಮನೆಯ ಕಾ
ಳೋರಗನು ಹೊಗುವಂತೆ ರಿಪು ಕುಂತೀಕುಮಾರಕರು
ವೈರದಲಿ ಸಪ್ತಾಂಗವನು ಕೈ
ಸೂರೆಗೊಂಬರು ತಪ್ಪದಿದಕೆ ವಿ
ಚಾರವನು ಕಾಲದಲಿ ಮಾಡುವುದೆಂದನಾ ಶಕುನಿ ೧೯

ಹಿಂದೆ ನೀನವರುಗಳ ನಾನಾ
ಚಂದದಲಿ ನೋಯಿಸಿದೆ ಮನದಲಿ
ಕಂದು ಕುಂದದು ಕಷ್ಟ ವೃತ್ತಿಯನಾಚರಿಸುತಿಹರು
ಇಂದು ನೀನಾ ಪಾಂಡುಪುತ್ರರ
ನಂದಗೆಡಿಸದೆ ಬಿಟ್ಟೆಯಾದೊಡೆ
ಮುಂದೆ ಬೆಟ್ಟಿತು ರಾಜಕಾರಿಯವೆಂದನಾ ಶಕುನಿ ೨೦

ಇರುಬಿನಲಿ ಸಿಕ್ಕಿರ್ದ ಹುಲಿಯನು
ಮುರಿದು ಕಳೆಯದೆ ತಳಪಟಕೆ ಬಿ
ಟ್ಟಿರಿಯಬಹುದೇ ಕೊಂದು ಕೂಗದೆ ಬಿಡುವುದೇ ಬಳಿಕ
ಕರುಬರಹ ಪಾಂಡವರಿಗೀಗಲೆ
ಹರುವ ನೆನೆ ಹೊರಬಿದ್ದರಾದೊಡೆ
ತರಿದು ಬಿಸುಡದೆ ಮಾಣ್ಬರೇ ಹೇಳೆಂದನಾ ಶಕುನಿ ೨೧

ಹರಿಹಯನು ವೃತ್ರಾಸುರನ ಸಂ
ಹರಿಸಲರಿಯದೆ ಗರುವದಿಂದಿರು
ತಿರಲವನು ದಿನದಿನದೊಳಣುವಣು ಮಾತ್ರವನು ಬೆಳೆದು
ಧರೆಯ ತುಂಬಲು ತನ್ನ ಸತ್ವದ
ನೆರವಣಿಗೆಗೈದಿಸದೆ ನಾನಾ
ತೆರದೊಳಾಯಸಗೊಳ್ಳನೇ ಹೇಳೆಂದನಾ ಶಕುನಿ ೨೨

ಅಡವಿಯಲಿ ಜನಿಸಿದರು ಬೆಳವಿಗೆ
ಯಡವಿಯೊಳಗಿನ್ನವರ ಬಾಳಿಕೆ
ಗಡವಿಯೇ ನೆಲಮನೆಯದಲ್ಲದೆ ಪಾಂಡುಪುತ್ರರಿಗೆ
ಪೊಡವಿಯೊಡೆತನ ಸಲ್ಲದವರನು
ನಡೆಸುವುದು ಕಾಲದಲಿ ರಾಜ್ಯವ
ಕೊಡುವುದಾವಂಗದಲಿ ಮತವಲ್ಲೆಂದನಾ ಶಕುನಿ ೨೩

ತಿಮಿರವಡಗಿದ ಲೋಕ ಶಿಕ್ಷಾ
ಕ್ರಮಣವಡಗಿದ ದಂತಿ ಕರ್ಮ
ಭ್ರಮೆಗಳಡಗಿದ ಯೋಗಿ ರುಜೆಯಡಗಿದ ನರೋತ್ತಮನು
ಹಿಮವಡಗಿದ ಸರೋಜದಂತಿಹು
ದಮಲ ಮತ ಕೇಳ್ಪಗೆಗಳಡಗಿದ
ಡಮರಪದವೆನಿಸುವುದು ಚಿತ್ತೈಸೆಂದನಾ ಶಕುನಿ ೨೪

ಬಿಡದೆ ಸುಖದುಃಖಗಳೊಳೊಂದನು
ಹಿಡಿದು ಸದ್ವ್ಯವಹಾರ ಮುಖದಲಿ
ನಡೆಯಲೊಂದರ ತುಷ್ಟಿಯೊಂದರ ನಷ್ಟ ತನಗಹುದು
ಹಿಡಿವುದಿಹಪರವೆರಡರೊಳಗಳ
ವಡಿಕೆ ತನಗಹುದೊಂದನೊಂದನು
ಬಿಡುವುದಲ್ಲದೆ ಬೇರೆ ಮತವಿಲ್ಲೆಂದನಾ ಶಕುನಿ ೨೫

ಭಾವ ಮೈದುನನಣ್ಣ ತಮ್ಮನು
ಮಾವನಳಿಯನು ಪುತ್ರಮಿತ್ರರು
ಸೇವಕರು ಸಜ್ಜನರು ಸುಜನರು ಸತ್ಯಯುತರೆಂದು
ಭಾವಿಸದಿರಾರುವನು ನಿನ್ನಯ
ಜೀವವುಳ್ಳನ್ನೆಬರ ನಿನ್ನಯ
ದೈವಗತಿಯೆಂದು ನಂಬಿಹುದೆಂದನಾ ಶಕುನಿ ೨೬

ಶತ್ರುಶೇಷವಿದಲ್ಪವೆಂದುಳು
ಹುತ್ತ ಬರಲಾಗದು ಕಣಾ ಭೂ
ಪೋತ್ತಮರುಗಳು ವೈರಿ ರಾಯರ ವಂಶ ಬೀಜವನು
ಬಿತ್ತುವರೆ ನೇತ್ರಾವಳಿಯ ಮೀ
ಟೆತ್ತಿ ಕಾರಾಗಾರದೊಳಗೆ ಕ
ಳತ್ರ ಸಹಿತಶನದಲಧಿಕ ವ್ರತವ ಮಾಡೆಂದ ೨೭

ವಿಷವನಣುವೆಂದಳುಕದುಪಭೋ
ಗಿಸಲು ಕೊಲ್ಲದೆ ಬಿಡುವುದೇ ಕರ
ಗಸದ ನಡು ಬಡವಾದರೆಯು ಕುಯ್ದಿಕ್ಕದೇ ತರುವ
ಶಿಶುವಿವನು ಸಾಮರ್ಥ್ಯ ಪುರುಷನೆ
ಪುಸಿಕಣಾಯೆಂದುಳುಹಿದೊಡೆ ರ
ಕ್ಕಸನಹನು ಮುಂದಕ್ಕೆ ತನಗವನೆಂದನಾ ಶಕುನಿ ೨೮

ಕಾಲವನು ಗೂಗೆಗಳು ನಿರ್ಜರ
ರೇಳಿಗೆಯನಾ ದೈತ್ಯರುಗಳು ತ
ಮಾಳಿ ರವಿರಶ್ಮಿಗಳನಾ ಬಲು ನಿದ್ರೆಯನು ಚೋರ
ಕಾಲ ಭುಜಗನು ಗರುಡನುಳಿವನು
ತಾಳದಂದದಿ ಪಾಂಡವರು ನಿ
ನ್ನೇಳಿಗೆಯ ಸೈರಿಸರು ಚಿತ್ತೈಸೆಂದನಾ ಶಕುನಿ ೨೯

ವಿಗಡ ರುದ್ರನು ಲೋಚನಾಗ್ನಿಯೊ
ಳೊಗುಮಿಗೆಯು ಕೋಪದಲಿ ಕಾಮನ
ಮಿಗೆ ದಹಿಸಿದಂದದಲಿ ರಿಪು ಕುಂತೀಕುಮಾರಕರ
ಹೊಗೆದು ಕಳೆ ಲಾಕ್ಷಾಭವನದಲಿ
ಹಗೆಗೆ ಹರಿವಹುದಲ್ಲದಿರ್ದೊಡೆ
ವಿಗಡಿಸುವುದೈ ರಾಜಕಾರ್ಯವಿದೆಂದನಾ ಶಕುನಿ ೩೦

ಹಿಡಿವ ಫಣಿಯನು ಹೊಡೆವ ಸಿಡಿಲನು
ಜಡಿವ ಮಾರಿಯ ನಲಿವ ರುಜೆಯನು
ಮಡಿವ ದಿನವನು ಹಾನಿವೃದ್ಧಿಯ ಹೆಚ್ಚು ಕುಂದುಗಳ
ಕಡಿವ ಹಗೆಯನು ಕಾಲಕರ್ಮದ
ಗಡಣವನು ಸುಖದುಃಖದುದಯದ
ಕಡೆ ಮೊದಲ ಕಾಣಿಸುವನಾವವನೆಂದನಾ ಶಕುನಿ ೩೧

ಇನಿತು ಚಿಂತಿಸಲೇಕೆ ಕೌರವ
ಜನಪ ನಿಮ್ಮಡಿಗಳಿಗೆ ತಾನೊಂ
ದನುವ ಬಿನ್ನಹ ಮಾಡುವೆನು ಪಾಂಡವರ ನೆಳಲಿರಲು
ನಿನಗೆ ರಾಜ್ಯವನಾಳ್ವ ಫಲ ಸಂ
ಜನಿಸಲರಿಯದು ಕಾಲದಲಿ ನೀ
ನೆನೆ ಉಪಾಯವನೊಂದನೆಂದು ಕಳಿಂಗ ಕೈ ಮುಗಿದ ೩೨

ದೇವ ದಾನವರಂತೆ ಹದ್ದಿನ
ಹಾವಿನೋಲತಿ ವೈರ ಬಂಧದ
ತಾವು ತವಣೆಯ ನೀರು ಭೇದಿಸುವಂತೆ ಭೇದಿಸುತ
ಕಾವವರ ಕಾವುತ್ತ ಕಂಟಕ
ಜೀವಿಗಳನಪಹರಿಸುತಂತ
ರ್ಭಾವಶುದ್ಧಿಯೊಳಿಳೆಯನಾಳುವುದೆಂದನಾ ಶಕುನಿ ೩೩

ಮತ್ಯುವಿನ ತಾಳಿಗೆಯೊಳಗ್ಗದ
ಶತ್ರುಗಳ ಸಾಮಿಪ್ಯದಲಿ ದು
ರ್ವೃತ್ತರೋಲಗದೊಳಗೆ ಸಿಂಹದ ಗುಹೆಯೊಳಹಿಪತಿಯ
ಹುತ್ತಿನೊಳಗಿಹವೋಲು ಸಲೆ ಬಾ
ಳುತ್ತಲಂತಃಪುರದೊಳರಸಿರ
ಲತ್ಯಧಿಕದೆಚ್ಚರಿಕೆಯಿರಬೇಕೆಂದನಾ ಶಕುನಿ ೩೪

ಹಗೆಯ ಹೆಂಗಳನರಮನೆಗಳೊಳು
ಪೊಗಿಸಲಾಗದು ತನಗವರು ಹೇ
ಳಿಗೆಯ ಹಾವಿನವೋಲು ಸುಖತರವಲ್ಲವರಿ ನೃಪರ
ಮಗಳ ಮಕ್ಕಳ ದೆಸೆಯವರನೋ
ಲಗಿಸುವರ ಬಾಹತ್ತರ ನಿಯೋ
ಗಿಗಳ ನಂಬುವುದುಚಿತವೇ ಹೇಳೆಂದನಾ ಶಕುನಿ ೩೫

ದೈವ ಹೊಡೆದಂದದಲಿ ಬೆರೆತು ಸ
ಭಾ ವಲಯದಲಿ ಗರ್ವ ವಿಭ್ರಮ
ಭಾವ ಭೂಷಿತನಾಗಿ ವೈಹಾಯಸವನೀಕ್ಷಿಸುತ
ಹಾವಿನಂದದೊಳಿರದೆ ಹಾಸ್ಯ ರ
ಸಾವಲಂಬನನಾಗದೆಯು ಸುಖ
ಜೀವಿಯಾಗಿಹುದುತ್ತಮವು ಕೇಳೆಂದನಾ ಶಕುನಿ ೩೬

ಹೀನಮುಖ ಬಹುಮುಖ ಪರಾಙ್ಮುಖ
ದೀನಮುಖ ವಾಚಾಲಮುಖವ
ಜ್ಞಾನಮುಖವಂತರ್ಮುಖ ಬಹಿರ್ಮುಖದ ಕಾರ್ಯದಲಿ
ಆ ನರೇಂದ್ರನ ವರ್ತನಕೆ ದು
ಸ್ಥಾನವಾಗದೆ ಬಿಡದು ಸಂಶಯ
ವೇನಿದಕೆ ಕುರುರಾಯ ಚಿತ್ತೈಸೆಂದನಾ ಶಕುನಿ ೩೭

ಶಯನದಲಿ ವಹ್ನಿಯಲಿ ವೈಹಾ
ಳಿಯಲಿ ಬೇಟೆಯಲೂಟದಲಿ ಕೇ
ಳಿಯಲಿ ಸುರತ ಕ್ರೀಡೆಯಲಿ ಮಜ್ಜನದ ಸಮಯದಲಿ
ಜಯದ ಜೋಕೆಯಲೋಲಗದ ಮರ
ವೆಯಲಿ ವಾರಸ್ತ್ರೀಯರುಗಳಲಿ
ಲಯವನೈದಿಸಬಹುದು ಚಿತ್ತೈಸೆಂದನಾ ಶಕುನಿ ೩೮

ರುಜೆಯನಲುಗುವ ರದನವ ದ್ರುಗು
ರಜವನನುಚಿತಜಾತ ಧೂಮ
ಧ್ವಜವ ರುಣವನವಿದ್ಯೆಯನು ಗೃಹಪಾಸ ಕುಂಡಲಿಯ
ವೃಜಿನವನು ಕಂಪಿತವ ವೈರಿ
ವ್ರಜವನುಳುಹುವನೆಗ್ಗನೆಂಬಿದು
ಸುಜನರಭಿಮತ ನಿನ್ನ ಮತವೇನೆಂದನಾ ಶಕುನಿ ೩೯

ಮಣಿದು ಕೂಪದ ಜೀವನವ ಕಡೆ
ಗಣಿಸದೇ ಘಟಯಂತ್ರ ಮೃಗರಿಪು
ಹಣಿಗಿದರೆ ಹರಿಣಂಗೆ ಗೆಲವೇ ಕಾರ್ಯಗತಿಯರಿದು
ಮಣಿವುದಳುಕುವುದಾವ ಪರಿಯಿಂ
ದೆಣಿಸಿ ಮನದಲಿ ವೈರಿ ರಾಯರ
ಹಣಿದವಾಡುವುಪಾಯವಿದು ಕೇಳೆಂದನಾ ಶಕುನಿ ೪೦

ಅಹಿಯ ಬಾಧೆಯ ಬಲೆಗೆ ಸಿಲುಕಿದ
ಮಿಹಿರ ಬಿಂಬದವೋಲು ಮಾಯಾ
ವಿಹರಣದ ವೀಥಿಯಲಿ ಸಿಕ್ಕಿದ ಜೀವರುಗಳಂತೆ
ಅಹಿತರುಪಟಳದೊಳಗೆ ಸಿಲುಕದೆ
ಕುಹಕರವದಿರ ಹರಿವ ನೆನೆ ಲೇ
ಸಹುದು ಕಾಲಕ್ಷೇಪವಿದಕೇನೆಂದನಾ ಶಕುನಿ ೪೧

ನಂಬುವರ ನೆರೆ ನಂಬು ನಂಬದ
ಡಂಬಕರ ನಂಬದಿರು ಸಂಗರ
ವೆಂಬ ಮಾತಿಗೆ ಹಂಬಲಿಸಿ ಬೆಂಬೀಳ್ವ ಬಾಹಿರರ
ನಂಬಿರದಿರರಿರಾಯ ಹನನ ವಿ
ಳಂಬನವ ಮಾಡದಿರು ರೋಷಾ
ಡಂಬರವ ರಚಿಸದಿರು ಬಹಿರಂಗದಲಿ ನೀನೆಂದ ೪೨

ಖೂಳನಹ ದಾತಾರನನು ದು
ರ್ಮೇಳನಹ ಮಿತ್ರನನು ತನಗನು
ಕೂಲೆಯಲ್ಲದ ಸತಿಯನಂತರ್ದಾಯಿಯಹ ನರನ
ವ್ಯಾಳಯುತವಹ ನಿಳಯವಿನಿತುವ
ಕಾಲದಲಿ ವರ್ಜಿಸುವುದಲ್ಲದೊ
ಡೂಳಿಗವು ಹಿರಿದಹುದು ಚಿತ್ತೈಸೆಂದನಾ ಶಕುನಿ ೪೩

ಎಲ್ಲರಿಂ ಬಹುಧನವ ಕೊಳು ನಿ
ನ್ನಲ್ಲಿ ಕಾಣೆಯ ಬರಿದೆ ಸೋಲದಿ
ರಿಲ್ಲವೆನ್ನದೆ ನುಡಿದು ಕಾಲಕ್ಷೇಪವನು ಮಾಡು
ಒಳ್ಳಿದನು ನಮಗೆಂಬ ನಯ ನುಡಿ
ಯೆಲ್ಲರಲಿ ಬೆಚ್ಚಂತೆ ರಿಪುಗಳ
ಗೆಲ್ಲಗೆಡಹುವ ಮಂತ್ರವಿದು ಕೇಳೆಂದನಾ ಶಕುನಿ ೪೪

ಧನವನಿತ್ತಾದೊಡೆಯು ಸಹ ಭೋ
ಜನವನುಂಡಾದೊಡೆಯು ಮೇಣ್ ನಿಜ
ತನುಜೆಯರನಿತ್ತಾದೊಡೆಯು ಬಳಿಸಂದು ಬೇಸರದೆ
ತನುವ ಬೆರಸಿದ್ದಾದೊಡೆಯು ನೂ
ತನಗಣವ ನುಡಿದಾದೊಡೆಯು ರಿಪು
ಜನಪತಿಯ ವಶಮಾಳ್ಪುದುಚಿತವಿದೆಂದನಾ ಶಕುನಿ ೪೫

ಕೋಶ ಪಾನಾದಿಗಳ ಮಾಡಿ ಮ
ಹೀಸುರರ ಮೇಲಾಯುಧಂಗಳ
ಸೂಸಿ ದೈವವ ಮುಟ್ಟಿ ದಿವ್ಯಾಜ್ಞೆಗಳಲೊಡಬಡಿಸಿ
ಹೇಸದರಿ ಭೂಪಾಲರನು ನಿ
ಶ್ಶೇಷವೆನಿಸುವುದಲ್ಲದಿರ್ದೊಡೆ
ಪೈಸರಿಸುವುದು ರಾಜಕಾರ್ಯವಿದೆಂದನಾ ಶಕುನಿ ೪೬

ನರಕವಿಲ್ಲದ ನರರು ನಾರಿಯ
ರುರುಬೆಯಿಲ್ಲದ ಯತಿಗಳಸುರರ
ವಿರಸವಿಲ್ಲದ ಸುರರು ಮಾಯಾಪಾಶವನು ಪರಿದ
ಪರಮ ತತ್ವಜ್ಞಾನಿವೊಲೀ
ಧರೆಯ ನರಪಾಲಕರುಗಳು ಹಗೆ
ಹರಿದು ಹೋಗಲಸಾಧ್ಯವಹುದೇನೆಂದನಾ ಶಕುನಿ ೪೭

ಮಸಗೆ ಮೂಡಿದ ಹೊಲನು ದುಷ್ಟ
ಪ್ರಸರದೇಳಿಗೆ ಪಾಪಿಯೋಲಗ
ಹುಸಿಯ ಬಾಳುವೆ ಹುದುವಿನಾರಂಭದ ಫಲೋದಯವು
ನಸಿದು ಹೋಗದೆ ಲೋಕದೊಳಗವು
ಹೆಸರುವಡೆವವೆ ಹಗೆಯ ಹೆಚ್ಚುಗೆ
ಹಸನ ಕೊಡುವುದೆ ರಾಯ ಚಿತ್ತೈಸೆಂದನಾ ಶಕುನಿ ೪೮

ಜಾತಿ ಬಾವನ್ನದಲಿ ಸರ್ಪದ
ಭೀತಿ ಸತ್ಪುರುಷರಿಗೆ ದುರ್ಜನ
ಭೀತಿ ದೇವಾದ್ಯರಿಗೆ ದನುಜಾದಿಗಳ ಬಲು ಭೀತಿ
ಜಾತ ಮಾತ್ರಕೆ ಜನನ ಮರಣದ
ಭೀತಿ ಬೆಂಬಿಡದಂತೆ ಗೋತ್ರಜ
ಭೀತಿ ಭೂಪಾಲರಿಗೆ ಹಿರಿದಹುದೆಂದನಾ ಶಕುನಿ ೪೯

ಕರಣಿಕರು ಕರಣಿಕರೊಡನೆ ಸಹ
ಚರರು ಸಹಚರರೊಡನೆ ಸಾವಂ
ತರಲಿ ಸಾವಂತರುಗಳಾ ಮಂತ್ರಿಯಲಿ ಮಂತ್ರಿಗಳು
ತರುಣಿಯರು ತರುಣಿಯರೊಡನೆ ಪರಿ
ಕರರು ಪರಿಕರರೊಡನೆಯಿರಲೊರ
ಸೊರಸು ಮಿಗೆ ಮಸೆವುದು ಕಣಾ ಭೂಭುಜನೆ ಕೇಳೆಂದ ೫೦

ವ್ಯಾಕುಲಿತ ವಿಪ್ರರ ವಿಸತಿಯ ದಿ
ವಾಕರನ ಲೋಕಾಯತರ ರ
ತ್ನಾಕರನ ಲಾವಕರ ಹಿಸುಳರ ದಾಯಭಾಗಿಗಳ
ಶೋಕಿಗರ ಮಾಯಾವಿಗಳ ದ
ರ್ವೀಕರನ ವಿನಿಯೋಗಿಗಳ ಸ
ರ್ವೈಕ ಮತ್ಸರದೊಳಗೆ ಬದುಕುವನಾವ ಪೇಳೆಂದ ೫೧

ಮಂಜು ಮಹಿಯನು ಮುಸುಕುವಂತೆ ಧ
ನಂಜಯನು ಕಾನನವ ಸುಡುವಂ
ತಂಜಿಕೆಗಳುಮ್ಮಾಹವನು ಹೊಯ್ದೊರಸುವಂದದಲಿ
ರಂಜಕರು ಪಾಂಡವರು ನಿನ್ನನು
ಭಂಜಿಸುವರಾವಂಗದಲಿ ನವ
ಕುಂಜರನ ಕಾಲಾಟ ಸಿಂಹಕೆ ಸೇರುವುದೆಯೆಂದ ೫೨

ದನಿಗೆ ನಡೆದೊಳಪೊಕ್ಕು ಮರ ಗೂ
ಡಿನಲಿ ಸಿಲುಕಿದ ಹುಲಿಯವೋಲ್ ಕಾ
ನನದಿ ಬೀಸಿದ ಬಲೆಯೊಳಗೆ ಗಾನಕ್ಕೆ ಮನ ಸೋಲ್ದು
ಹನನವರಿಯದ ಮೃಗದವೊಲಿರು
ಬಿನಲಿ ಕೆಡಹಿದ ಕರಿಯವೋಲ್ ರಿಪು
ಜನಪರಭ್ಯುದಯದ ವಿನಾಶವನೆಸಗಬೇಕೆಂದ ೫೩

ಎಂದು ದುರ್ಬೋಧೆಗಳ ನಾನಾ
ಚಂದದಲಿ ಬೋಧಿಸಿ ಸುನೀತಿಯ
ನಂದಗೆಡಿಸಿ ತದೀಯ ವಂಶಚ್ಛೇದ ಮಾರ್ಗವನು
ಒಂದುಗೂಡಿ ಸುಯೋಧನಂಗಾ
ನಂದವೆನಿಸಿ ಕಳಿಂಗ ಲೋಕವ
ಕೊಂದನೈ ಜನಮೇಜಯ ಕ್ಷಿತಿಪಾಲ ಕೇಳೆಂದ ೫೪

ಎಮ್ಮ ಬಹುಮಾನಾವಮಾನವು
ನಿಮ್ಮದಲ್ಲದೆ ಬೇರೆ ನಮ್ಮಯ
ಸೊಮ್ಮು ಸಂಬಂಧದಲಿ ಹಿತವರ ಕಾಣೆ ನಾನಿನ್ನು
ಸಮ್ಮತದಿ ಪಾಂಡವರಿಗಗ್ಗಿಯ
ಲೊಮ್ಮೆ ಹರಿವನು ನೆನೆವನೊದವಿದ
ಡೆಮ್ಮ ಸುಕೃತೋದಯದ ಫಲವೆಂದನು ಸುಯೋಧನನು ೫೫

ಎನೆ ಕಳಿಂಗಾದಿಗಳು ತಂತ
ಮ್ಮನುಮತವ ಹೇಳಿದರು ಕೌರವ
ಜನಪನವರಿಗೆ ಕೇಡ ನಿಶ್ಚೈಸಿದನು ಮನದೊಳಗೆ
ಜನಕನಲ್ಲಿಗೆ ನಡುವಿರುಳು ಬಂ
ದನುನಯದೊಳೀ ಮಾತ ತೆಗೆದೆಂ
ದನು ವೃಕೋದರನೂಳಿಗವನರ್ಜುನನ ಸಾಹಸವ ೫೬

ಅರಿಗಳುದ್ಭವವಿನ್ನು ಗಂಟಲ
ನರಿವುದೆಮ್ಮನು ನೂರು ಮಕ್ಕಳ
ನರಸ ಬರಿದೇ ಹಡೆದು ಕೆಡಿಸಿದೆ ತಾಯ ಜವ್ವನವ
ಇರಲಿ ಭೀಮಾರ್ಜುನರು ಹಸ್ತಿನ
ಪುರದೊಳೆಮ್ಮಿನಿಬರನು ದೇಶಾಂ
ತರಕೆ ನೇಮಿಸು ಜೀಯ ನೂಕದು ಭೀಮನೊಡನೆಂದ ೫೭

ಅಕಟ ಮಗನೇ ಧರ್ಮಸುತ ಬಾ
ಧಕನೆ ಭೀಮಾರ್ಜುನರ ಮತಿ ಕಂ
ಟಕದೊಳೆರಗದು ಮೀರಿ ನಡೆಯರು ಧರ್ಮನಂದನನ
ಸಕಲ ರಾಜ್ಯಕೆ ಪಾಂಡುವೇ ಪಾ
ಲಕನು ತನ್ನೊಳು ತಪ್ಪಿದನೆ ಬಿಡು
ವಿಕಳ ಮತಿಗಳ ಮಾತನೆಂದನು ಮಗಗೆ ಧೃತರಾಷ್ಟ್ರ ೫೮

ಬೊಪ್ಪ ಬಿನ್ನಹವವರ ಜನಕನು
ತಪ್ಪಿ ನಡೆಯನು ನಿಮಗೆ ನೀವಿ
ನ್ನೊಪ್ಪಿಸುವುದಾ ಪಾಂಡುಸುತರಿಗೆ ರಾಜ್ಯ ವೈಭವವ
ಅಪ್ಪುದಿಳೆ ಧರ್ಮಜನ ತರುವಾ
ಯಪ್ಪುದಾ ವಿಧಿಯಲ್ಲಿ ಸಂತತಿ
ತಪ್ಪದವರಿಗೆ ಸಲಿಲ ನೆಲವಿದು ಹೊಲ್ಲಹೇನೆಂದ ೫೯

ಜನಪ ಸುಖದಲಿ ನಿಮ್ಮ ತಮ್ಮನ
ತನುಜರೊಡನೆಯು ರಾಜ್ಯ ಮಾಡುವು
ದನುನಯವಲಾ ಬೀಳುಕೊಡುವುದು ನಮ್ಮ ನೂರ್ವರನು
ಜನಪರುಂಟೋಲೈಸಿ ಕೊಂಬರೆ
ತನಗಿರದೆ ಖಂಡೆಯದ ಸಿರಿ ಕರೆ
ಜನನಿಯುನು ಬೀಳ್ಕೊಂಬೆವಿನ್ನೇನೆಂದು ನಿಂದಿರ್ದ ೬೦

ಎಲೆ ಮಗನೆ ಎನ್ನಾಣೆ ಬಾ ಕುರು
ಕುಲತಿಲಕ ನೀ ಹೋಗಲೆನ್ನೊಡ
ಲುಳಿವುದೇ ಮರಿಯಾನೆ ಬಾರೈ ಕಂದ ಬಾಯೆಂದು
ಸೆಳೆದು ಬಿಗಿಯಪ್ಪಿದನು ಕಂಬನಿ
ದುಳುಕಿದನು ಹೇಳಿನ್ನು ಮೇಲಣ
ಬಳಕೆಯನು ರಿಪುರಾಜಕಾರ್ಯಕೆ ಬುದ್ಧಿಯೇನೆಂದ ೬೧

ನೀರ ವಿಷವಿಕ್ಕಿದೆವು ಕಿಚ್ಚಿನ
ಭಾರವಣೆಯೇನಹುದೋ ಪುಣ್ಯವ
ಹೋರಿಸುವ ಒದಗಿದರೆ ಹೋಗಲಿ ನಮ್ಮ ಹಗೆ ಹರಿದು
ಓರಣೆಸಿತೈ ವೈರಿಗಳ ವಿ
ಸ್ತಾರ ಮೆರೆಯಲಿ ಜೀಯ ಜೂಜಿನ
ಬಾರುಗುತ್ತಿದು ನಿಮ್ಮ ಚಿತ್ತಕೆ ಬಹಡೆ ಮಾಡುವವು ೬೨

ಆವ ತೆರದಲಿ ವೈರಿ ಭಟಕುಲ
ದಾವಿಗೆಯನಿಡಿಸುವಿರಿ ನಿಮ್ಮೊಳ
ಗಾವು ಹೊರಗೇ ಮಗನೆ ಸೊಗಸೆನೆ ನಿಮ್ಮ ವೈಭವಕೆ
ಸಾವರಾವಂದದಲಿ ಮಿಗೆ ಸಂ
ಭಾವಿಸುವುದಾ ತೆರನ ನೀ ಹೇ
ಳಾವು ಸೊಗಸುವೆವೆಂದು ನುಡಿದನು ಮಗಗೆ ಧೃತರಾಷ್ಟ್ರ ೬೩

ಕರೆಸಿ ಪಾಂಡು ಕುಮಾರಕರ ನೀ
ಧರೆಯ ಹಸುಗೆಯ ಮಾಡಿ ಕೊಡು ಕರಿ
ತುರಗ ಭಂಡಾರವನು ಸಹ ದಾಯಾದ ವಿಷಯದಲಿ
ಇರವನವರಿಗೆ ವಾರಣಾವತಿ
ಪುರದೊಳಗೆ ಪರುಠವಿಸಿ ಕೊಡು ತಾ
ನುರುಹಿ ಸುಡುವೆನು ಬಳಿಕ ಲಾಕ್ಷಾಭವನ ರಚನೆಯಲಿ ೬೪

ಅಹುದು ಮಗನೇ ಮಂತ್ರವಿದು ಮತ
ವಹುದು ನಮಗೀ ಭೀಷ್ಮ ವಿದುರರು
ಕುಹಕಿಗಳು ಕೃತಭಿನ್ನವಾದರೆ ಭಾರವದು ಮೇಲೆ
ಗಹನ ಗತಿಯಲಿ ಗೂಢತರ ಸ
ನ್ನಿಹಿತ ಕರ್ಮ ಕಲಾಪದಲಿ ರಿಪು
ದಹನ ಸಿದ್ಧಿಯ ನೆನೆವುದೆಂದನು ಮಗಗೆ ಧೃತರಾಷ್ಟ್ರ ೬೫

ಜನಕನನು ಬೀಳ್ಕೊಂಡು ಕೌರವ
ಜನಪ ತನ್ನರಮನೆಯ ಸಚಿವರೊ
ಳನುಪಮಿತ ವಿಶ್ವಾಸ ಸೂಚಕನನು ಪುರೋಚನನ
ನೆನೆದ ಕೌರವ ರಾಜಕಾರ್ಯದ
ಘನವನರುಹಿ ಸಮಗ್ರ ಧನ ಸಾ
ಧನವ ಜೋಡಿಸಿ ಕೊಟ್ಟು ಕಳುಹಿದನವನ ಗುಪ್ತದಲಿ ೬೬

ಆ ಪುರೋಚನನೆಂಬವನು ಬಲು
ಪಾಪಕರ್ಮನು ಕುರುಪತಿಗೆ ಬಳಿ
ಕಾ ಪುರಾಂತರದಿಂದ ಬಂದನು ವಾರಣಾವತಿಗೆ
ಆ ಪುರದ ಜನವರಿಯದಂತಿರೆ
ಕಾಪುರುಷನಳವಡಿಸಿದನು ನಸು
ದೀಪ ತಾಗಿದೊಡೇಕರೂಪಹ ರಾಜಭವನವನು ೬೭

ನಿಗಮ ಸಂಸ್ಥಿತ ವಾಸ್ತುರಚನಾ
ದಿಗಳನಾಯುವ್ಯಯದ ತಾರಾ
ದಿಗಳ ರಾಶಿಗ್ರಹ ಬಲದ ವಿಪರೀತ ಯೋಗದಲಿ
ಹಗಲು ತೀರಲು ತಳಿತ ಕೈ ದೀ
ವಿಗೆಯ ಹಂತಿಯ ಬೆಡಗಿನಲಿ ಕೇ
ಡಿಗನು ಕ ತ್ರಿಮ ರಚನೆಯಲಿ ಮಾಡಿಸಿದನರಮನೆಯ ೬೮

ಅರಗಿನಲಿ ಭಿತ್ತಿಗಳ ನವ ಸ
ಜ್ಜರಸ ಗುಡಮಿಶ್ರದಲಿ ನೆಲೆಯು
ಪ್ಪರಿಗೆಗಳನವರಲಿ ಕವಾಟ ಸ್ತಂಭ ವೇದಿಗಳ
ವಿರಚಿಸಿದ ನವ ಸೌಧ ಭದ್ರಾ
ಸ್ತರಣ ನಂದ್ಯಾವರ್ತದಲಿ ಪರಿ
ಪರಿಯ ಬಿನ್ನಾಣದೊಳಗರಗಿನ ಮನೆಯ ಮಾಡಿಸಿದ ೬೯

ಹಿರಿಯ ಭವನದ ಸುತ್ತುವಳಯದ
ಮರುಹಿನಲಿ ಮನೆ ಮನೆಗಳಾ ಮಂ
ದಿರ ನಿಕಾಯಕೆ ಬಾಗಿಲೊಂದಾ ದ್ವಾರ ದೇಶದಲಿ
ಇರವು ತನ್ನದು ಬಾಗಿಲಿಕ್ಕಿದು
ಹೊರಗೆ ಮುದ್ರಿಸಿ ಕಿಚ್ಚ ಚುಚ್ಚುವ
ಪರುಠವಣೆಯಲಿ ಖಳ ಪುರೋಚನನಂದು ನಿರ್ಮಿಸಿದ ೭೦

ಧರಣಿಪತಿ ಕೇಳಿತ್ತ ಹಸ್ತಿನ
ಪುರದೊಳಗೆ ಕುಂತೀಕುಮಾರರ
ಕರೆಸಿ ಕಟ್ಟೇಕಾಂತದಲಿ ಧೃತರಾಷ್ಟ್ರ ಭೂಪಾಲ
ಬೆರಗು ಬಿನ್ನಾಣದಲಿ ಮಕ್ಕಳ
ಮರುಳ ಮಾಡಿದನೇನ ಹೇಳುವೆ
ನುರಿವನೆಯ ಬೀಡಾರದಲಿ ಬಿಡಿಸಲ್ಕೆ ಮನದಂದ ೭೧

ದುರುಳರೀ ಕೌರವರು ನೀವತಿ
ಗರುವರವದಿರು ಪಾಪ ಕರ್ಮರು
ಪರಮ ಪುಣ್ಯರು ನೀವು ತನ್ನವದಿರು ಕುಮಂತ್ರಿಗಳು
ಎರಳೆ ತೋಳನ ಸಾದು ಸುಣ್ಣದ
ನೆರವಿಗದುವಾವಗೆಯ ಸೇರುವೆ
ಯರಸ ನಿನ್ನೊಡನೆನ್ನ ಕುನ್ನಿಗಳೆನುತ ಬಿಸುಸುಯ್ದು ೭೨

ತಂದೆಯಿಲ್ಲದ ನಿಮಗೆ ಹಿತರಾ
ರೆಂದುಮರುಗುವೆನೆನ್ನ ಮಕ್ಕಳು
ಕೊಂದು ಹಿಂಡೆಯ ಕೂಳನುಂಬರೆ ಹೇಸುವವರಲ್ಲ
ಇಂದು ನಿಮಗವರಿಂದಲುಪಹತಿ
ಬಂದುದಾದರೆ ತನ್ನ ತಲೆಯಲಿ
ನಿಂದು ಹೊರೆವುದಕೀರ್ತಿ ಕಿಲ್ಬಿಷ ಮಗನೆ ಕೇಳೆಂದ ೭೩

ತಾತ ಕೆಡುವಿರಿ ನೀವು ತನಗ
ಖ್ಯಾತಿ ಕೌರವರೆಂಬುವರು ದು
ರ್ನೀತಿಕಾರರು ಭೀಷ್ಮ ವಿದುರರು ಭೀತರವದಿರಿಗೆ
ನೀತಿ ಸಮ್ಮತವಾಗಿ ಚಿತ್ತದೊ
ಳಾತ ಮತವನು ಹೇಳಿ ನಮ್ಮೊಳು
ಭೀತಿ ಬೇಡೆಂದರಸ ಹಿಡಿದನು ಧರ್ಮಜನ ಕರವ ೭೪

ಬೇರೆ ಮತವೆಮಗೇನು ಬೊಪ್ಪನ
ಚಾರಿ ನಿಮ್ಮದು ನೀವು ಬೊಪ್ಪನ
ನೂರು ಮಡಿಯೆಮಗೊಳ್ಳಿದರು ಬೇರಿನ್ನು ಹಿತರುಂಟೆ
ಬೇರಿರಿಸಿ ಕೊಡಿಸಿರಿ ನಿಮಗೆಯು
ತೋರಿದುದೆ ಮತ ನಿಮ್ಮ ನೇಮವ
ಮೀರ ಬಲ್ಲೆನೆಯೆಂದು ಧರ್ಮಜ ನುಡಿದನರಸಂಗೆ ೭೫

ಎರೆಯ ವಂಕಿಯೊ ಕಳಿತ ಮಕ್ಕೆಯೊ
ಹುರಿಯ ಬಲೆಯೋ ರಾಗ ಸನ್ನೆಯೊ
ಸರಿಯ ಗೊರೆಯೋ ಠಕ್ಕಿನುಂಡೆಯೊ ಸವಿಯ ಚಿತ್ರಕವೊ
ಅರಸನಂಕೆಯ ಮನದ ಬಯಕೆಯ
ಹೊರೆಯ ಬಳಕೆಯನೀ ಸಮಂಜಸ
ತರದ ಸಾತ್ವಿಕರೆತ್ತ ಬಲ್ಲರು ಭೂಪ ಕೇಳೆಂದ ೭೬

ಕಂದ ಮನ ಮುನಿಸಿಲ್ಲಲೇ ನಾ
ವೆಂದ ನುಡಿಗೊಡಬಡುವಿರಾದೊಡೆ
ಮುಂದೆ ಪುರವಿದೆ ವಾರಣಾವತವಿಲ್ಲಿಗರುವತ್ತು
ಸಂದ ನಾಡು ಸಮಸ್ತ ವಸ್ತುಗ
ಳಿಂದ ಪೂರಿತ ಹಸ್ತಿನಾಪುರ
ದಿಂದ ಮಿಗಿಲದು ರಾಜಧಾನಿ ಸ್ಥಾನ ನಿಮಗೆಂದ ೭೭

ಹೈ ಹಸಾದ ಭವತ್ ಕೃಪಾ ಸ
ನ್ನಾಹವೇ ಸಾಮ್ರಾಜ್ಯವಾವುದ
ನೂಹಿಸಿದೊಡಾ ಸ್ಥಿತಿಯೊಳಡಗಿಹೆವೆಂದು ವಿನಯದಲಿ
ಗಾಹುಗತಕವನರಿಯದಿವರು
ತ್ಸಾಹದಲಿ ಕೈಕೊಂಡು ಭೀಷ್ಮಗೆ
ಬೇಹ ವಿದುರ ದ್ರೋಣ ಮುಖ್ಯರಿಗರುಹಿದರು ಹದನ ೭೮

ಧಾರುಣೀಪತಿ ರತ್ನಮಯ ಭಂ
ಡಾರ ಸಹಿತ ಗಜಾಶ್ವ ರಥ ಪರಿ
ವಾರವನು ಮಾಡಿದನು ಹಸಿಗೆಯನೆರಡು ಭಾಗವನು
ಕೌರವರಿಗೊಂದಿವರಿಗೊಂದೆನ
ಲೋರಣದಲಳವಡಿಸಿ ಬಹು ವಿ
ಸ್ತಾರದಲಿ ಭೀಷ್ಮಾದ್ಯರಹುದೆನಲಿವರ ಮನ್ನಿಸಿದ ೭೯

ಇವರು ಶುಭದಿನ ಶುಭಮುಹೂರ್ತ
ಪ್ರವರದಲಿ ಹೊರವಂಟರಾ ಜನ
ನಿವಹ ಮರುಗಿತರಣ್ಯವೇ ಗತಿಯರಸ ನಮಗೆಂದು
ಅವರ ಕಳುಹುತ ಬಂದರಾ ಕೌ
ರವರು ನಿಂದರು ಭೀಷ್ಮ ಕಲಶೋ
ದ್ಭವರು ಸುತರಿಗೆ ಬುದ್ಧಿ ಹೇಳಿದು ಮರಳಿದರು ಪುರಕೆ ೮೦

ವಿದುರನೊಡನೆ ತರುತ ಸಂಕೇ
ತದಲಿ ಸೂಚಿಸಿ ಮರಳಿದನು ನೃಪ
ಸುದತಿ ವರ ಗಾಂಧಾರಿ ಮೊದಲಾದಖಿಳ ರಾಣಿಯರು
ಮುದದ ಮುರುವಿನಲಿವರ ತೆಗೆದ
ಪ್ಪಿದರು ಭೂಪತಿ ಸಹಿತ ಕಡು ಶೋ
ಕದಲಿ ಕಳುಹಿಸಿಕೊಂಡು ಬಂದರು ಹಸ್ತಿನಾಪುರಕೆ ೮೧

ಅರಸ ಕೇಳೈ ಹಸ್ತಿನಾಪುರ
ವರವ ಹೊರವಡುವಾ ಮುಹೂರ್ತಕೆ
ವರುಷವಿಪ್ಪತ್ತೊಂಬತಾದುದು ಧರ್ಮನಂದನಗೆ
ವರುಷ ಹದಿಮೂರರಲಿ ಹಸ್ತಿನ
ಪುರದೊಳಿದ್ದರು ಹಿಂದೆ ಷೋಡಶ
ವರುಷ ವನದೊಳಗಿಂತು ಲೆಕ್ಕವ ನೋಡಿಕೋಯೆಂದ ೮೨

ಬಂದರೈವರು ಕುಂತಿ ಸಹಿತಾ
ನಂದದಲಿ ವರ ವಾರಣಾವತ
ಕಂದು ಪುರಜನ ಕೂಡಿ ಕನ್ನಡಿ ಕಲಶ ವಿಭವದಲಿ
ಬಂದು ತಾವಿದಿರಾಗಿ ಕುಂತೀ
ನಂದನರ ಹೊಗಿಸಿದರು ಪಟ್ಟಣ
ವಂದು ಮೆರೆದುದು ಕೂಡೆ ಗುಡಿತೋರಣದ ರಚನೆಯಲಿ ೮೩

ಬೀಡು ಕಾಣಿಕೆಯಿತ್ತು ಕಂಡುದು
ನಾಡೆ ಕಾಣಿಸಿದನು ಪುರೋಚನ
ಕೂಡೆ ಸಂದನು ಹಾಸು ಹೊಕ್ಕಾಗವರ ಮನವರಿದು
ನೋಡಿದನು ಯಮನಂದನನು ಮನೆ
ಮಾಡಿದಂದವನರಗಿನರಮನೆ
ಗೂಡುರಿವ ಬೇಳುವೆಯ ನೆನೆದರೆ ಬೊಪ್ಪನವರೆಂದ ೮೪

ಸಮಿಧೆಗಳು ನಾವ್ ನಾಲ್ವರಯ್ಯನ
ರಮಣಿಯಾಹುತಿ ಭೀಮನೇ ಪಶು
ಕುಮತಿ ಕಟ್ಟಿಸಿದರಮನೆಯಗ್ನಿಕುಂಡವಿದು
ಎಮಗೆ ಸಂಶಯವಿಲ್ಲ ರಾಜೋ
ತ್ತಮನೊ ದುರ್ಯೋಧನನೊ ದೀಕ್ಷಾ
ಕ್ರಮವ ಧರಿಸಿದವನಾವನೆಂದನು ನಗುತ ಯಮಸೂನು ೮೫

ಜನಪ ಕೇಳೈ ವಿದುರನಟ್ಟಿದ
ಖನಕ ಬಂದನುಯಿವರ ಸಜ್ಜೆಯ
ಮನೆಯಲತಿ ಗುಪ್ತದಲಿ ನೆಲದೊಳು ಸವೆಸಿದನು ಪಥವ
ಅನುದಿನದೊಳಾ ಬಾಹಿರನು ಕಿ
ಚ್ಚಿನಲಿ ಚುಚ್ಚುವ ಸಂದುಗಟ್ಟನು
ನೆನೆವುತಿರ್ದನು ಖಳ ಪುರೋಚನನೊಡೆಯನಾಜ್ಞೆಯಲಿ ೮೬

ಒಂದು ದಿನ ಹಬ್ಬದಲಿ ಭೂಸುರ
ವೃಂದವುಂಡುದು ಪಂಚಪುತ್ರಿಕೆ
ಯೆಂದು ಬೇಡತಿಯೊಬ್ಬಳಿದ್ದಳು ಸುತರು ಸಹಿತಲ್ಲಿ
ಅಂದಿನಿರುಳು ಪುರೋಚನನು ತಾ
ನೊಂದ ನೆನೆದರೆ ದೈವಗತಿ ಬೇ
ರೊಂದ ನೆನೆದುದು ಕೇಳು ಜನಮೇಜಯ ಮಹೀಪಾಲ ೮೭

ಅವನು ನಿದ್ರೆಯೊಳರಿಯದಿರಲಾ
ಭವನ ಮುಖದಲಿ ಕಿಚ್ಚನೊಟ್ಟಿಸಿ
ಪವನಸುತ ಸಹಿತಿವರು ಹಾಯ್ದರು ಬಿಲದ ಮಾರ್ಗದಲಿ
ಅವರು ಬೆಂದರು ಮುನ್ನ ಬಳಿಕಾ
ಭವನ ಪಂಕ್ತಿಗಳುರಿದು ಕರಗಿದ
ವವನಿಯಲಿ ಹೊಸಲಾಯ್ತು ಪುರಜನವೈದೆ ಬೆರಗಾಗೆ ೮೮

ಅಕಟ ಪಾಂಡವರಳಿದರೇ ಕೌ
ಳಿಕದಿ ಕೌರವರಿರಿದರೇ ಮತಿ
ವಿಕಳರವದಿರು ಬೆಂದು ಹೋದರು ಧರ್ಮದಲಿ ನಡೆದು
ಪ್ರಕಟ ಪಾಪರಿಗಹುದು ಸಾಮ್ರಾ
ಜ್ಯಕವು ಧರ್ಮಾತ್ಮರಿಗೆಯಿಾ ಪರಿ
ವಿಕಟತೆಯಸುರ ರಾಜ್ಯವೆಂದುದು ಪೌರಜನ ಮರುಗಿ ೮೯

ಮುನ್ನ ಬೆಂದನಲಾ ಪುರೋಚನ
ಕುನ್ನಿಯದು ಲೇಸಾಯ್ತು ಹದನಾ
ಪನ್ನರಾದರೆ ಅವ್ವೆಯರು ಸಹಿತಕಟ ಪಾಂಡವರು
ಇನ್ನು ಸುಡು ಸುಡು ಧರ್ಮ ಸಂಪ್ರತಿ
ಪನ್ನ ಗುಣದಾಚಾರಗಳ ಸಂ
ಪನ್ನತೆಯನೆಂದೊರಲಿ ಮರುಗಿತು ನಿಖಿಳ ಪರಿವಾರ ೯೦

ಒಗೆದುದೀ ಬೇಳಂಬ ಹಸ್ತಿನ
ನಗರಿಯಲಿ ತತ್ಪೌರಜನ ಮನ
ವುಗಿದು ಬಿದ್ದುದು ಶೋಕಮಯ ಸಾಗರದ ಮಧ್ಯದಲಿ
ಹೊಗೆದುದಾನನ ವಿದುರ ಭೀಷ್ಮಾ
ದಿಗಳಿಗಾ ಧೃತರಾಷ್ಟ್ರ ಸುತರಿಗೆ
ದುಗುಡ ದಡ್ಡಿಯ ಹರುಷ ಸಿರಿ ಹೊಕ್ಕಳು ಮುಖಾಂಬುಜವ ೯೧

ಬಂದುದಾ ಸುರನದಿಗೆ ಕೌರವ
ವೃಂದ ಪರಿಜನವೈದೆ ಶೋಕಿಸಿ
ಮಿಂದು ಗಂಗಾ ತೀರದಲಿ ಬಳಿಕೂರ್ಧ್ವ ದೇಹಿಕವ
ಸಂದ ವಿಧಿಯಲಿ ಮಾಡಿ ಪರಮಾ
ನಂದ ಮಿಗಲವರಿರ್ದರಿತ್ತಲು
ಇಂದುಕುಲ ಸಂಭವರ ವಿಧಿಯನು ಮತ್ತೆ ಕೇಳೆಂದ ೯೨

ಬಿಲಮುಖದೊಳುತ್ತರಿಸಿ ಬಲುಗ
ತ್ತಲೆಯೊಳಡವಿಯ ಮಾರ್ಗದಲಿ ಕಲು
ಮುಳುಗಳೊಳು ಕಾಪಥಕೆ ಕೋಮಲ ಚರಣಗಳ ಕೊಡುತ
ತೊಳಲಿದರು ಬೆಳಗಾಗೆ ಹಳ್ಳಿಯ
ಬಳಿಯ ಹೊದ್ದದೆ ಹಾಯ್ದು ಹೊಕ್ಕರು
ಹಳುವವನು ಬೆಳಗಡಗೆ ನಡೆದರು ಹಲವು ಯೋಜನವ ೯೩

ದಾಟಿದರು ಗಂಗೆಯನು ರಾಯನ
ಮಾಟದಲಿ ಹಲು ಮುರಿದುದೇ ನ
ಮ್ಮಾಟಕಿದು ಹಿರಿದಲ್ಲಲಾಯೆನುತೈವರಡಿಗಡಿಗೆ
ಕೋಟಲೆಯ ಕೊಲ್ಲಣಿಗೆಯಲಿ ಮೈ
ನೋಟಕಲಸದೆ ಬಿಸಿಲಲಿವರು ಮ
ಹಾಟವಿಯ ಮಧ್ಯವನು ಹೊಕ್ಕರು ನೃಪತಿ ಕೇಳೆಂದ ೯೪

ಒಂಭತ್ತನೆಯ ಸಂಧಿ

ಸೂ. ಬೆಂಬಿಡದೆ ಕಲಿಭೀಮ ಹಿಡಿದು ಹಿ
ಡಿಂಬಕನ ಮುರಿದವನ ತಂಗಿ ಹಿ
ಡಿಂಬಿಯನು ಕೂಡಿದನು ಪಡೆದನು ಕಲಿ ಘಟೋತ್ಕಚನ

ಕೇಳು ಜನಮೇಜಯ ಧರಿತ್ರೀ
ಪಾಲ ಯಮನಂದನನ ಪಾರ್ಥನ
ಕಾಲೊಡೆದು ಬಸಿವರುಣ ಜಲದಲಿ ಬಟ್ಟೆ ಕೆಸರಾಯ್ತು
ಮೇಲೆ ಯಮಳರ ಕುಂತಿಯರನೇ
ವೇಳುವೆನು ಬೇಗದಲಿ ಕುರು ಭೂ
ಪಾಲ ಹಿಡಿಯಲಿ ಕೊಲಲೆನುತ ಕುಳ್ಳಿರ್ದರಡವಿಯಲಿ ೧

ಉರಿವ ಮನೆಯಲಿ ಸಾಯಲೀಯದೆ
ಸೆರಗ ಹಿಡಿದೆಳತಂದು ಕೊಯ್ದನು
ಕೊರಳನಕಟಾ ಭೀಮನೇ ಹಗೆಯೆಂದಳಾ ಕುಂತಿ
ಅರಸ ಹಿಡಿಯಲಿ ದಾನವರು ನಿಂ
ದಿರಿಕೆಯಲಿ ನುಂಗಲಿ ಕೃತಾರ್ಥರು
ಧರೆಯೊಳಾವೆಂದೊದರಿದರು ಮಾದ್ರೀ ಕುಮಾರಕರು ೨

ಸಾಕು ಸಾಕಾನಿರಲು ಹೆಕ್ಕಳ
ವೇಕೆ ಹೋ ಹೋಯೆನುತ ಹೊತ್ತನು
ನೂಕಿ ಹೆಗಲೆರಡರಲಿ ಕುಂತಿಯ ಧರ್ಮನಂದನನ
ಆ ಕಿರೀಟಿಯನೆಡದಲಾ ಮಾ
ದ್ರೀಕುಮಾರರ ಬಲದ ಬದಿಯೊಳ
ಗೌಕಿ ನಡೆದನು ಭೀಮನೊಡೆಹಾಯ್ದೊದೆದು ಕಲು ಮರನ ೩

ಬಂದನೀ ಪರಿ ಹಲವು ಯೋಜನ
ದಿಂದ ಹೇರಡವಿಯಲಿ ಬಳಲಿದೆ
ನೆಂದನೇ ನೀರಡಿಸಿದನೆ ಮೇಣ್ ನಿದ್ರೆಗೆಳಸಿದನೆ
ತಂದು ಕಾನನ ಮಧ್ಯದಲಿ ತರು
ವೃಂದದಡಿಯೊಳಗಿಳುಹಿ ಬಳಿಕರ
ವಿಂದದೆಲೆಯಲಿ ನೀರ ತಂದೆರೆದನು ಮಹೀಶರಿಗೆ ೪

ತಳಿರ ತರಿದೊಟ್ಟಿದನು ತರುವಿನ
ನೆಳಲೊಳಗೆ ವಿಶ್ರಮಿಸಿದರು ತನು
ಬಳಲಿಕೆಯ ಭಾರಣೆಯ ಕಡು ಜೋಡಿಸಿದ ಝೋಂಪಿನಲಿ
ಝುಳಕೆ ಕಂದಿದ ಮೈಯ ಬಾಡಿದ
ಲಲಿತವದನದ ಮಾಸಿ ಕೆದರಿದ
ತಲೆಯೊಳಿರೆ ತನ್ನೈವರನು ಕಂಡಳಲಿದನು ಭೀಮ ೫

ತಾಯೆ ನೀ ದಿಟ ನಾಗ ನಗರಿಯ
ರಾಯನರಸಿಯೆ ನಿನ್ನ ಮಕ್ಕಳು
ರಾಯರೆದೆದಲ್ಲಣರೆ ಭಾರಿಯ ಬಾಹು ವಿಕ್ರಮರೆ
ಈಯವಸ್ಥೆಗೆ ಸೋಮವಂಶದ
ರಾಯತನವೆಂತಹುದು ಹೇಳೌ
ತಾಯೆ ಹೇಳೆನ್ನಾಣೆ ಹೇಳೆಂದಳಲಿದನು ಭೀಮ ೬

ಜನನಿಯಂಘ್ರಿಯನೊತ್ತಿ ಯಮ ನಂ
ದನನ ಚರಣವ ಮುರಿದು ಬಳಿಕ
ರ್ಜುನನ ಯಮಳರ ಪದವನೆಚ್ಚರದಂತೆ ಹಿಡಿಕಿಸುತ
ಅನಿಬರಿರವನು ನೋಡಿ ಪೂರ್ವವ
ನೆನೆದು ಬಿರಿದಳುತ ಘನ ಕಾ
ನನದ ಮಧ್ಯದಲೀತನಿದ್ದನು ಹಿರಿದು ಚಿಂತಿಸುತ ೭

ಔಕುವುದು ಬಲು ನಿದ್ರೆ ನಿದ್ರೆಯ
ನೂಕುವನು ಕಣ್ಣೆವೆಗಳಲಿ ನಸು
ತೂಕಡಿಕೆ ತೋರಿದೊಡೆ ಮೈಗೆದರುವನು ಕೈಯೊಡನೆ
ಸೋಕುವುದು ಮೈಮರವೆ ಮರವೆಯ
ನೋಕರಿಸುವುದು ಚಿತ್ತವೃತ್ತಿ ನಿ
ರಾಕುಲಾಂತಃಕರಣನಾದನು ಬಳಿಕ ಕಲಿಭೀಮ ೮

ವ್ಯಾಳ ಗಜ ಭೂದಾರ ವೃಕ ಶಾ
ರ್ದೂಲ ಸಿಂಹಾದಿಗಳ ಭಯವಾ
ಕೀಳ ದೈತ್ಯ ಪ್ರಕರ ಭಯವಹುದೆನ್ನ ಮರವೆಯಲಿ
ಹೇಳಲೇನದನಿನ್ನು ನಿದ್ರಾ
ವ್ಯಾಳ ವಿಷವನು ಮೊಗೆದು ಸೂಸಿ ವಿ
ಶಾಲ ಮತಿಯವಧಾನದಲಿ ಕಾದಿರ್ದನೈವರನು ೯

ಧರಣಿಪತಿ ಕೇಳೊಂದು ಮಾರಿಯ
ಮುರಿವನಿವರಿಗೆ ತದ್ವನಾಂತರ
ದರಸು ದೈತ್ಯ ಹಿಡಿಂಬನೆಂಬವನತುಲ ಭುಜಬಲನು
ಮುರಿಮುರಿದು ಮೇಗಾಳಿಯಲಿ ಮೂ
ಗರಳಿ ಮಾನವ ಗಂಧವಿದು ಗೋ
ಚರಿಸಿತೆತ್ತಣದೋ ಮಹಾದೇವೆನುತ ಬೆರಗಾದ ೧೦

ತಾಯೆ ಬಾರೌ ತಂಗಿ ಗಂಧದ
ವಾಯುವಿದೆ ಹೊಣೆಗಾರನಾಗಿ ನ
ವಾಯ ಭೋಜನವಿಂದು ದೊರಕಿತು ಮನುಜ ಮಾಂಸದಲಿ
ಸಾಯಲವದಿರ ಬಡಿದು ತಾ ತಮ
ಗಾಯವಿದು ಕೃತಪುಣ್ಯಫಲವೆನೆ
ಮಾಯಗಾತಿ ಹಸಾದವೆನುತ ಹಿಡಿಂಬಿ ಗಮಿಸಿದಳು ೧೧

ಬಂದಳವಳತಿ ರೌದ್ರರೂಪಿನೊ
ಳಂದು ಕಂಡಳು ದೂರದಲಿ ಹರಿ
ನಂದನನ ಸುಳಿದಲೆಯ ಕೆಮ್ಮೀಸೆಗಳ ಕರ್ಕಶದ
ಕೆಂದಳದ ಕೇಸರಿಯ ಕಂಗಳ
ಕುಂದ ರದನಚ್ಛವಿಯಲಿರೆ ಮನ
ಸಂದಳಾ ಖಳನನುಜೆ ಸೋತಳು ಭೀಮಸೇನಂಗೆ ೧೨

ಇವನ ರಮಣನ ಮಾಡಿಕೊಂಡೋ
ಡುವೆನು ವಿಪಿನಾಂತರಕೆ ಮುನಿದವ
ನಿವದಿರೈವರ ತಿನಲಿ ಮರದಡಿಯಲ್ಲಿ ಮಲಗಿದರ
ಇವನು ತನ್ನಯ ರೌದ್ರಮಯ ರೂ
ಪವನು ಕಂಡರೆ ಹೆದರುವನಲಾ
ಯುವತಿಯಹೆನೆಂದಸುರೆ ಸುಳಿದಳು ದಿವ್ಯರೂಪಿನಲಿ ೧೩

ಹೊಳೆವ ಕಂಗಳ ಕಾಂತಿ ಮರಗ
ತ್ತಲೆಯ ಮೊತ್ತವ ಬಗಿಯೆ ಮೈ ಪರಿ
ಮಳಕೆ ತೂಳುವ ತುಂಬಿಗಳ ತನುಲತೆಯ ಚೆಲುವಿಕೆಯ
ಲಲನೆ ಸುಳಿದಳು ಕುಚದ ಭಾರಕೆ
ಬಳುಕೆ ನಡು ಬಿಡದೊಲೆದು ಮೇಲುದು
ತಳೆಯೆ ಸುಳಿಗುರುಳೊಲೆಯಲಾ ಕಲಿ ಭೀಮನಿದಿರಿನಲಿ ೧೪

ಭೀಮ ನೋಡನು ನುಡಿಸನೊಯ್ಯನೆ
ತಾಮರಸಮುಖಿ ಹೊದ್ದಿದಳು ನಿ
ಸ್ಸೀಮನೈ ನೀನಾರು ಮಲಗಿದ ಮರ್ತ್ಯರಿವರಾರು
ಈ ಮಹಾರಣ್ಯದಲಿ ಬರವಿದು
ಕಾಮಿತವೆ ಕೋಮಲರಿಗೆನೆ ನಿ
ಷ್ಕಾಮ ಮನದಲಿ ಸತಿಯ ನುಡಿಸಿದನಾರು ನೀನೆಂದು ೧೫

ವನ ಹಿಡಿಂಬನದಾ ಹಿಡಿಂಬಕ
ನನುಜೆ ತಾನು ಹಿಡಿಂಬಿಯೀ ಕಾ
ನನವಿದೆಮ್ಮಾಶ್ರಮವಗಮ್ಯವು ದಿವಿಜ ಮನುಜರಿಗೆ
ನಿನಗೆ ಕಾಮಿಸಿ ಬಂದೆನಣ್ಣನು
ಮುನಿದೊಡಿವದಿರ ತಿನಲಿ ನೀನೇ
ಳೆನಗೆ ವಲ್ಲಭನಾಗು ಕೊಂಡೊಯ್ವೆನು ಹಿಮಾಚಲಕೆ ೧೬

ನಿನ್ನನೊಲ್ಲೆನು ಮುನಿದೆಯಾದಡೆ
ನಿನ್ನ ದೈತ್ಯನ ಕೊಂಡು ಬಾ ಹೋ
ಗೆನ್ನ ಬಲುಹನು ನೋಡು ನೀನೆನಲಸುರೆ ವಿನಯದಲಿ
ಮುನ್ನಲೇ ಮನುಮಥನ ಶರದಲಿ
ಖಿನ್ನೆಯಾಗಿಹೆ ಮರೆಯ ಹೊಕ್ಕೆನು
ತನ್ನನೀ ಪರಿ ಮುರಿದು ನುಡಿವರೆ ಎಂದಳಿಂದುಮುಖಿ ೧೭

ಅನುಜೆ ತಳುವಿದಳೆಂದು ರೋಷ
ಸ್ತನಿತ ಗದ್ಗದ ಕಂಠನೊದೆದೆ
ದ್ದನು ಮಹೀಮಂಡಲವನುಗ್ರಾಂಬಕನ ಡೊಂಬಿನಲಿ
ಅನಿಲಸುತನಿದಿರೆದ್ದನೀತನೆ
ದನುಜೆ ನಿನ್ನವನಾಯ್ತು ತಪ್ಪೇ
ನೆನುತೆ ಹಳಚಿದೊಡಾ ಹಿಡಿಂಬಕ ಜಡಿದು ಬೊಬ್ಬಿರಿದ ೧೮

ಒರಲಬೇಡವೊ ಕುನ್ನಿ ಮೆಲ್ಲನೆ
ತರುಬಿ ಕಾದುವುದೆಲವೊ ಮೈಮರೆ
ದೊರಗಿದವರೇಳ್ವರು ಕಣಾ ಸತ್ತಂತೆ ಸಾರೆನುತ
ತರುಬಿ ಹಿಡಿದಾ ಭೀಮ ಬೆನ್ನಿನೊ
ಳೆರಗಿದನು ಹೆಮ್ಮರಕೆ ಹಾಯಿದು
ಮುರಿದು ಹೊಯ್ದು ಹಿಡಿಂಬ ಕೊಡಹಿದನನಿಲನಂದನನ ೧೯

ಎದ್ದು ತಿವಿದನು ಖಳನ ಬದಿಯೊಳ
ಗದ್ದುದೀತನ ಮುಷ್ಟಿ ಮುರಿದೊಡ
ನೆದ್ದು ನಿಮಿಷಕೆ ಸಂತವಿಸಿ ಹೆಮ್ಮರನ ಕೊಂಬಿನಲಿ
ಗೆದ್ದೆಯಿದ ಕೊಳ್ಳೆನುತ ಖಳನು
ಬ್ಬೆದ್ದು ಹೊಯ್ದರೆ ಮರ ಸಹಿತ ಹಿಡಿ
ದುದ್ದಿ ನೆಲದೊಳಗೊರಸಿ ಕೊಂದನು ಕಲಿ ಹಿಡಿಂಬಕನ ೨೦

ಕಳಕಳದೊಳಿವರೆದ್ದು ಯಿವನತಿ
ಬಳ ಮಹಾದೇವೆಮ್ಮನೆಬ್ಬಿಸಿ
ಬಳಿಕ ಕಾದದೆ ತಮ್ಮ ಕೆಡಿಸಲು ಕಾಕ ಬಳಸಿದೆಲ
ಬಳಲಿದೆಮ್ಮನು ಹೊತ್ತು ತೊಳಲಿದ
ಬಳಲಿಕೆಯಲೀ ಕೇಡು ಲೇಸಾ
ಯ್ತುಳಿದೆ ಪುಣ್ಯವಿದೆಂದರಾ ಯಮನಂದನಾದಿಗಳು ೨೧

ಖಳ ಮಡಿಯಲವನನುಜೆ ಭೀಮನ
ನೊಲಿಸಲರಿಯದೆ ಕುಂತಿಗೆಲ್ಲವ
ತಿಳುಹಿ ನುಡಿದಳು ತನ್ನ ಪೂರ್ವಾಪರದ ಸಂಗತಿಯ
ಹಲವು ಪರಿಯಲಿಯಿವರನವಳಂ
ಡಲೆದು ಭೀಮಗೆ ಹೇಳಿಸಿದಳಾ
ಫಲುಗುಣನ ಕೈಯಿಂದ ಧರ್ಮಜನಿಂದ ನುಡಿಸಿದಳು ೨೨

ಆರು ನುಡಿಯಲು ಸರ್ವಥಾ ಖಳ
ನಾರಿಯನು ಕೈಕೊಳ್ಳೆನೆಂದೇ
ವೀರ ಬಲಿದನು ಬಳಿಕ ವೇದವ್ಯಾಸಮುನಿ ಬಂದು
ಸಾರ ನಯದಲಿ ತೋರಿ ತಿಳುಹಿ ಕಂ
ಮಾರ ಸಂಭವವವಧಿಯೆಂದಾ
ನಾರಿಯನು ಗಂಟಿಕ್ಕಿದನು ಮುನಿ ಭೀಮಸೇನಂಗೆ ೨೩

ಎಲ್ಲಿ ಉಪವನ ವರಸರೋವರ
ವೆಲ್ಲಿ ಕೇಳೀ ಶೈಲ ಹಿಮಗೃಹ
ವೆಲ್ಲಿ ರಮ್ಯೋದ್ಯಾನವೆಲ್ಲಿ ವಿಹಾರ ವನಭೂಮಿ
ಅಲ್ಲಿಗಲ್ಲಿಗೆ ಹರಿದು ಮಾರುತಿ
ವಲ್ಲಭೆಯ ರಮಿಸಿದನು ಚೌಪಟ
ಮಲ್ಲ ಜನಿಸಿದ ಕಲಿ ಘಟೋತ್ಕಚನಾ ಹಿಡಿಂಬಿಯಲಿ ೨೪

ನುಡಿದ ಸಮಯಕೆ ತನ್ನ ರಮಣಿಯ
ನೊಡಬಡಿಸಿ ಹೈಡಿಂಬ ರಾಜ್ಯದ
ವೊಡೆತನವ ನೆರೆ ಮಾಡಿ ನಿಲಿಸಿದನಾ ಘಟೋತ್ಕಚನ
ನಡೆದು ಬಂದರು ಶಾಲಿಹೋತ್ರನ
ನಡುವೆ ಕಂಡುಪಚರಿಸಿ ಕೊಂಡರು
ಪಡುವಲಭಿಮುಖರಾದರನಿಬರು ವಿಪ್ರವೇಷದಲಿ ೨೫

ಹತ್ತನೆಯ ಸಂಧಿ

ಸೂ. ವಿಕಟ ಭುಜಬಲರೇಕಚಕ್ರದೊ
ಳಕುಟಿಲರು ಭೂಸುರರ ರಕ್ಷಿಸಿ
ಬಕನ ಮುರಿದರು ಮೆರೆದರಮಲ ಗುಣಾಗ್ರಹಾರದಲಿ

ಕೇಳು ಜನಮೇಜಯ ಮಹೀಪತಿ
ಶಾಲಿಹೋತ್ರಾಶ್ರಮವನನಿಬರು
ಬೀಳುಕೊಂಡರು ಮತ್ತೆ ಕಂಡರು ಬಾದರಾಯಣನ
ಹೇಳಿದನು ನಿಮಗೇಕಚಕ್ರ ವಿ
ಶಾಲಪುರದೊಳಗಾರು ತಿಂಗಳು
ಕಾಲ ಸವೆಯಲಿ ಬಳಿಕ ಬಳಸುವಿರುತ್ತರೋತ್ತರವ ೧

ಎಂದು ಮುನಿ ತಿರುಗಿದನು ಕುಂತೀ
ನಂದನರು ಸುಕ್ಷಾತ್ರ ತೇಜೋ
ವೃಂದವನು ಮುಸುಕಿದರು ವಿಮಲ ಬ್ರಹ್ಮ ರಶ್ಮಿಯಲಿ
ಅಂದವೇರಿದ ಗಡ್ಡ ದರ್ಭೆಗ
ಳಿಂದ ನೆರಿಯುಡಿಗೆಗಳ ನಾಟಕ
ದಿಂದ ಮಟ್ಟಿಯ ಧಟ್ಟು ನೊಸಲಲಿ ದೇಶಿ ಪರಿ ಮೆರೆಯೆ ೨

ಅವನಿಪತಿ ಕೇಳೇಕಚಕ್ರವ
ನಿವರು ಹೊಕ್ಕರು ವಿಪ್ರನೊಬ್ಬನ
ಭವನದಲಿ ಮಾಡಿದರು ಬೀಡಾರವನು ವಿನಯದಲಿ
ಇವರು ಯಾಚಕ ವಿಷಯದಾತಿ
ಥ್ಯವನು ಕೈಕೊಂಡಲ್ಲಿ ಕತಿಪಯ
ದಿವಸವನು ನೂಕಿದರು ಭಿಕ್ಷಾ ವಿಹಿತ ವೃತ್ತಿಯಲಿ ೩

ತಂದ ಭಿಕ್ಷಾಶನವನೈವರು
ನಂದನರು ತಾಯಿಗೆ ನಿವೇದಿಸ
ಲಿಂದುಮುಖಿ ಭಾಗದ್ವಯವ ಸಾನಂದದಲಿ ಮಾಡಿ
ಒಂದು ಭಾಗ ವೃಕೋದರಂಗುಳಿ
ದೊಂದು ಭಾಗವ ತಾನು ನಾಲ್ವರು
ನಂದನರು ವಿನಿಯೋಗಿಸುವರವನೀಶ ಕೇಳೆಂದ ೪

ಸಿರಿಯ ಹೇಳ್ವರೆ ಹಸ್ತಿನಾಪುರ
ದರಸುಗಳ ಸಂತಾನ ಶೌರ್ಯದ
ಪರಿಯ ನೋಳ್ಪರೆ ಶಕ್ರ ಸೂರ್ಯರ ತೇಜಕುರೆ ಮಿಗಿಲು
ತಿರಿದ ಕೂಳನು ತಾಯಿ ಹಸುಗೆಯ
ಲೆರಡು ಭಾಗವ ಮಾಡಿ ಮಕ್ಕಳ
ಹೊರೆದಳಿನ್ನುಳಿದವರ ಪಾಡೇನರಸ ಕೇಳೆಂದ ೫

ಉದಯವಾಗದ ಮುನ್ನ ಸುಬ್ರಾ
ಹ್ಮ್ಯದ ಮುಹೂರ್ತದಲೆದ್ದು ಜನನಿಯ
ಪದಯುಗಕ್ಕಭಿನಮಿಸಿ ಸಂಧ್ಯಾಮಠಕೆ ನಡೆತಂದು
ವಿದಿತ ಸಂಧ್ಯೋಪಾಸ್ಥೆ ಜಪ ನಿಯ
ಮದ ಪುರಾಣಶ್ರವಣ ಮಧ್ಯಾ
ಹ್ನದಲಿ ಭಿಕ್ಷಾಟನಗಳಿವರಿಗೆ ನಿತ್ಯ ವಿಧಿಯೆಂದ ೬

ಭೋಜನೋತ್ತರ ವೇಳೆಯಲಿ ನೃಪ
ರಾಜವಾರ್ತಾ ಕಥನದಿಂದ ಮ
ಹಾಜನಂಗಳೊಳಾಡುತಿರ್ದರು ನಿಜವಿನೋದದಲಿ
ರಾಜತನವನು ಮರೆದರಾ ದ್ವಿಜ
ರಾಜತೇಜದಿ ಮೆರೆದರಾ ನರ
ರಾಜರಾಜರ ನೀತಿಯಿದು ಭೂಪಾಲ ಕೇಳೆಂದ ೭

ಇರಲಿರಲು ಮಾಸಾಂತರದಲಾ
ನೆರೆಮನೆಯ ಶೋಕಾರ್ತ ರವದ
ಬ್ಬರವ ಕೇಳಿದು ಕುಂತಿ ಸಾಯಂಕಾಲ ಸಮಯದಲಿ
ಭರದಿನೈತಂದಕಟ ಭೂಸುರ
ವರ ನಿರೋಧವಿದೇನು ದುಃಖೋ
ತ್ಕರುಷವಾಕಸ್ಮಿಕವದೆಂದಳು ಕುಂತಿ ವಿನಯದಲಿ ೮

ನಾಳೆ ವೈವಾಹೋತ್ಸವದ ದೆ
ಸ್ಪಾಳವಿದು ಮೊದಲೀ ವಸಂತದ
ಬಾಲಿಕೆಯರೋಕುಳಿಯ ಮಳೆಯಲಿ ಸಿಡಿಲು ಸುಳಿದುದೆನೆ
ಹೇಳಿರೇ ನಿಮಗಾದವಸ್ಥೆಯ
ಕೇಳಲಾಗದೆಯೆನಲು ದ್ವಿಜನಿದ
ಕೇಳಿ ಫಲವೇನವ್ವಯೆಂದನು ಸುಯ್ದು ದುಗುಡದಲಿ ೯

ಹೇಳಬೇಹುದು ತನ್ನನಿಷ್ಟವ
ನಾಳಿಗೊಳ್ಳದ ಸುಜನ ನಿಕರಕೆ
ಕೇಳಬೇಹುದು ದೀನರಹ ವಿಪ್ರೇಂದ್ರರುಪಹತಿಯ
ಹೇಳು ನೀನೆಲೆ ವಿಪ್ರ ತಾನಿದ
ಕೇಳಿ ದುಃಖಿತೆಯಾಗಲಾಗದೆ
ಹೇಳ್ "ನ ದುಃಖಂ ಪಂಚಭಿಸ್ಸಹ" ವೆನ್ನದೇ ವಚನ ೧೦

ತಾಯೆ ಕೇಳೀ ವಿಪ್ರಪುರದೊಳ
ಗಾಯವುಂಟೆನಗೆಂದು ರಕ್ಕಸ
ನಾಯಿ ನೆಲಸಿಹನೂರ ಹೊರಗಣ ಶೈಲಶಿಖರದಲಿ
ಆಯಿದೊಬ್ಬನ ಮನೆಮನೆಗೆ ಮೇ
ಲಾಯಿ ಮಹಿಷದ್ವಯ ಸಹಿತ ನಿ
ರ್ದಾಯದಲಿ ಹನ್ನೆರಡು ಕಂಡುಗದಕ್ಕಿಯೋಗರವ ೧೧

ಇನಿತುವನು ಮನೆಮನೆಗೆ ಬಾರಿಯ
ದಿನಕೆ ತೆತ್ತಡೆ ತುಷ್ಟನಿಲ್ಲದ
ದಿನಕೆ ನುಂಗುವನೂರನೀ ಪರಿ ಹಲವು ಕಾಲದಲಿ
ಎನಗೆ ಬಂದುದು ತಾಯೆ ನಾಳಿನ
ದಿನದ ಬಾರಿಯಿದಕ್ಕೆ ತನ್ನಯ
ತನುಜ ತಾನುಳಿದಂತೆ ಮಾನಿಸರಿಲ್ಲ ತನಗೆಂದ ೧೨

ಮಗನನೀವೆನೆ ಪಾರಲೌಕಿಕ
ವಗಡಹುದಪಖ್ಯಾತಿ ತನ್ನನು
ತಗುಹುದೈಹಿಕದಲ್ಲಿ ಬಳಿಕೀ ಸಂತತಿಚ್ಛೇದ
ಬಗೆಯುದೆನ್ನೊಡಲಸುರ ಘಾತಿಗೆ
ಮಿಗೆ ವಿಭಾಡಿಸಿ ಕೊಡುವೆನೆಂದೆನೆ
ನಗುತೆ ಕುಂತೀದೇವಿ ನುಡಿದಳು ವಿಪ್ರ ಕೇಳೆಂದು ೧೩

ಐಸಲೇ ನಿಮಗಾದ ಗಸಣೆಯಿ
ದೇಸರಾಪತ್ತುಂಜಬೇಡ ಮ
ಹಾಸುರನ ಬಾಣಸದ ಬೀಯಕೆ ರಪಣವುಂಟೆಮಗೆ
ಏಸು ಕಂಡುಗದಕ್ಕಿಯೋಗರ
ವೈಸ ನೀನಳವಡಿಸು ಮೇಲುಂ
ಟೇಸು ಸಾಧನವನಿತುವನು ತೆಗೆಸೆಂದಳಾ ಕುಂತಿ ೧೪

ತಿರುಗಿ ನಿಮ್ಮೂರೊಳಗೆ ಕೂಳನು
ತಿರಿದು ಸಲಹುವೆನೆನ್ನ ಮಕ್ಕಳು
ಧರೆಯನಾಳುವ ಸತ್ವ ಸಹಸಿಗಳಿದ್ದು ಫಲವೇನು
ಹೊರೆಯಲರಿಯೆನು ದುರುಳನೆರಡೆಂ
ಟರಿಯನದರೊಳಗೊಬ್ಬನುದರಕೆ
ನೆರಹಲಾರೆನು ಕೂಳನೆಂದಳು ಕುಂತಿ ನಸುನಗುತ ೧೫

ಸಾಕಲಾರೆನು ಮಗನನಾತನ
ನೂಕುವೆನು ನಿಮ್ಮಸುರನೂಟಕೆ
ಸಾಕು ತನಗುಳಿದವರೆನಲ್ ದ್ವಿಜನದಕೆ ಬೆರಗಾಗಿ
ಸಾಕಲಾರದೆ ಮಗನನುರಿಯಲಿ
ನೂಕಿದವರುಂಟೆ ಮಹಾಸತಿ
ಯಾಕೆವಾಳತನಕ್ಕೆ ನಮಿಸಿದೆನೆನುತ ಕೈಮುಗಿದ ೧೬

ಮರುಳಲಾ ಬ್ರಾಹ್ಮಣ ವೃಥಾ ವಿ
ಸ್ತರಣ ವಾಕ್ಯವೆ ತನ್ನ ನುಡಿ ಸಂ
ವರಿಸು ಬಂಡಿಯ ನಡೆಸು ಭಕ್ಷ್ಯವ ಸೂಪದಂಶಕವ
ತರಿಸು ತುಪ್ಪದ ಕೊಡನನೊದವಿಸು
ಹರವಿಗಳ ಪಾಲ್ಮೊಸರನೆನೆ ಭೂ
ಸುರನು ಕುಂತಿಗೆ ಕೈಯ ಮುಗಿದನು ತಾಯೆ ಬೇಡೆನುತ ೧೭

ಎರವು ಮುಯಿಮುಟ್ಟುಂಟು ವಸ್ತೂ
ತ್ಕರದೊಳಗೆ ಭಾವಿಸಲು ಮಕ್ಕಳ
ನೆರವ ಕೊಟ್ಟವರುಂಟೆ ಮಾರಿಯ ನಾಲಿಗೆಯ ಸವಿಗೆ
ನೆರವಿ ನಗದೇ ನಮ್ಮನಿಹಪರ
ವೆರಡರಲಿ ಕೇಳಹುದು ಕಷ್ಟವು
ಗರುವೆಯಹುದೌ ತಾಯಿ ನೀ ದಿಟ ಮನುಜೆಯಲ್ಲೆಂದ ೧೮

ಏನನಿತ್ತು ದಧೀಚಿ ಲೋಗರ
ಹಾನಿಯನು ಕಾಯಿದನು ಶಿಬಿ ತಾ
ನೇನನಿತ್ತನು ಕೇಳಿದೈ ಜೀಮೂತವಾಹನನು
ಏನ ಮಾಡಿದನೆಂದು ನೀನಿದ
ನೇನುವನು ಕೇಳ್ದರಿಯಲಾ ಮ
ತ್ಸೂನುವನು ನಿನ್ನವಸರಕೆ ಕೊಳ್ಳೆಂದಳಾ ಕುಂತಿ ೧೯

ಆವನರ್ಥ ಪರಾರ್ಥದಲಿ ಸಂ
ಜೀವನಿಯನೈದಿತು ಪರಾರ್ಥದೊ
ಳಾವನಸು ನಿರ್ವಾಣಮಾದುದು ಲೋಕ ಮೂರರಲಿ
ಆ ವಿರಿಂಚಿ ಪುರಂದರಾದಿಯ
ದೇವ ತತಿಗಿವರಿಬ್ಬರೇ ಸಂ
ಭಾವನೀಯರು ಕೇಳು ಭೂಸುರಯೆಂದಳಾ ಕುಂತಿ ೨೦

ಬಲುಹಿನಲಿ ಭೂಸುರನ ಚಿತ್ತವ
ತಿಳುಹಿ ಬಂದಳು ಮನೆಗೆ ಭೀಮನ
ಕೆಲಕೆ ಕರೆದಳು ಹೇಳಿದಳು ಹೇರಾಳದೌತಣವ
ಉಲಿದು ಮುದದಲಿ ಭೀಮ ಬಾಹ
ಪ್ಪಳಿಸಿದನು ಯಮನಂದನಾದಿಗ
ಳಳಲಿ ನುಡಿದರು ದೈತ್ಯಜಯ ಸಂಶಯದ ಭೇದದಲಿ ೨೧

ಮರುಳುಗಳು ನೀವೆಂದವರ ಚ
ಪ್ಪರಿಸಿದನು ಕಲಿಭೀಮನಾ ನಡು
ವಿರುಳು ತೊಡಗಿತು ವಿಪ್ರ ಭವನದ ಪಾಕಮಯು ರಭಸ
ಹೊರೆದಳೆನ್ನನು ತಾಯಿ ಕುಂತಿಯು
ಹರಸುವೆನು ಪಾರಣೆಯ ಹೊತ್ತಿನೊ
ಳರಸು ನಾಳಿನೊಳಾನೆನುತ ಹಿಗ್ಗಿದನು ಕಲಿಭೀಮ ೨೨

ಪರಿಪರಿಯ ಬಹುಭಕ್ಷ್ಯ ಪಾಕದ
ಪರಿಮಳದ ಶಾಕಾದಿಗಳ ವೊ
ಗ್ಗರಣೆಗಳ ಸೌರಭಕೆ ತಿಳಿದುದು ನಿದ್ರೆ ಪವನಜನ
ತರಣಿ ಸುಳಿದನು ಪೂರ್ವ ಶೈಲದ
ಶಿರದ ಬಳಿಯಲಿ ಭೀಮ ಕುಂತಿಯ
ಕರೆದು ಕಳುಹಿದನಾ ಮಹೀಸುರ ಗೃಹಕೆ ವಹಿಲದಲಿ ೨೩

ಏನು ಬಂದಿರಿ ತಾಯೆ ಚಾಪಳ
ವೇನೆನಲು ತೆಗೆ ಹೂಡು ಬಂಡಿಯ
ನೇನು ಜಂಜಡ ಬೇಡ ಭಕ್ಷ್ಯವ ಹಿಡಿಸು ಕುನಿಕಿಲಲಿ
ಭಾನುವುದಿಸಿದನೆನಲು ಘನ ಸು
ಮ್ಮಾನದಲಿ ಸಾಧನ ಸಮಗ್ರವ
ಸೂನು ಸಹಿತಡಕಿದನು ಭಾರಿಯ ಬಂಡಿ ಜವ ಜಡಿಯೆ ೨೪

ನಳನಳಿಪ ಬಹುವಿಧದ ಭಕ್ಷ್ಯಾ
ವಳಿಯ ಹೆಡೆಗೆಗಳೋರಣಿಸಿಮಂ
ಡಳಿಸಿ ಕೂಡಿದ ಹಾಲು ತುಪ್ಪದ ಹಲವು ಹರವಿಗಳ
ಬಳಸಿ ಮುಚ್ಚಿದ ವಿವಿಧ ಶಾಕಾ
ವಳಿಯು ಬೋನದ ಬಿಗಿದ ಕುನಿಕಿಲ
ಕಳವೆಯಕ್ಕಿಯ ಕೂಳ ರಾಶಿಯ ಬಂಡಿ ಜೋಡಿಸಿತು ೨೫

ಮರಳಿ ಬಂದಳು ಕುಂತಿ ಭೀಮನ
ಕರೆದಳೇಳೈ ಪಾರಣೆಗೆ ಕಾ
ತರಿಸದಿರು ಖಳನೊಡನೆ ಸದೆವುದು ಸತ್ವದನುವರಿದು
ಬರವ ಬರಿದೇ ಬೀಯ ಮಾಡದಿ
ರುರವಣೆಯನರಿದಾನುವುದು ಸಂ
ಹರಿಸು ದೈತ್ಯನನೆಂದು ತಾಯ್ ಹರಸಿದಳು ನಂದನನ ೨೬

ಬೆರಳ ದರ್ಭೆಯ ಹರಿದು ಧೌತಾಂ
ಬರವನುಟ್ಟನು ಬಿಗಿದು ಕುಂತಿಯ
ಚರಣ ರಜವನು ಕೊಂಡು ಧರ್ಮಜನಂಘ್ರಿಗಭಿನಮಿಸಿ
ಹರುಷ ಮಿಗೆ ಹರಿತಂದು ಬಂಡಿಯ
ಶಿರದ ಹಲಗೆಯನಡರಿದನು ಬಲು
ಹುರಿಯ ಹಗ್ಗವ ಹಿಡಿದು ಜಡಿದನು ಹೂಡಿದೆತ್ತುಗಳ ೨೭

ಪುರದೊಳಗೆ ಭಿಕ್ಷಾನ್ನದಿಂದೈ
ವರು ಮಹಾಪಂಡಿತರು ನಿರ್ಧನ
ಪುರುಷರವರೊಳಗೊಬ್ಬನನು ನಮ್ಮೂರ ದಾನವನ
ಪರಿವಿಡಿಯು ಭೋಜನಕೆ ತದ್ಭೂ
ಸುರನ ತಾಯ್ಕೊಟ್ಟಳು ಗಡೇನ
ಚ್ಚರಿಯೆನುತ ಪವನಜನ ಮುತ್ತಿತು ನೋಟಕರ ನೆರವಿ ೨೮

ಪೌರ ಜನವೈತರಲು ಬಂಡಿಯ
ನೂರ ಹೊರವಂಡಿಸಿದನೆಲ್ಲರು
ದೂರದಲ್ಲಿರಿ ಸಾವವನೆ ತಾ ಸಾಕು ದೈತ್ಯನಲಿ
ಸಾರಿ ನೀವೆಂದೆನುತ ಹೂಡಿದ
ಹೋರಿಗಳ ಹೊಯ್ದುಬ್ಬರಿಸಿ ರಣ
ಧೀರ ಮಾರುತಿ ಮಿಕ್ಕು ಹರಿಸಿದನಸುರನಿದ್ದೆಡೆಗೆ ೨೯

ಎಡೆಯಲೇ ಭಕ್ಷ್ಯಾದಿಗಳ ಬರಿ
ಹೆಡೆಗೆಯುಳಿದವು ಕೂಳೊಳರ್ಧವ
ಹೊಡೆದು ಸುರಿದನು ಹಾಲುತುಪ್ಪದ ಹರವಿಯೋಜೆಯಲಿ
ಕುಡಿದು ಪಕ್ಕಲೆ ನೀರನೊಯ್ಯನೆ
ನಡೆಸಿ ತಂದನು ಕಂಡು ದನುಜನ
ನುಡಿದನೆಲವೋ ಕುನ್ನಿ ಕೂಳಿದೆ ತಿನ್ನು ಬಾರೆನುತ ೩೦

ಕಂಡು ಖಳ ಬೆರಗಾದನಿವನು
ದ್ದಂಡತನವಚ್ಚರಿಯಲಾ ಹರಿ
ಖಂಡಪರಶುಗಳಳುಕುವರು ತನ್ನೊಡನೆ ತೊಡಕುವರೆ
ಬಂಡಿ ತುಂಬಿದ ಕೂಳ ನಿವನಿಂ
ದುಂಡು ಬದುಕಲಿ ಊರ ಪಾರ್ವರ
ಹಿಂಡುವೆನುಯಿವ ಸಹಿತೆನುತ ಹಲು ಮೊರೆದನಮರಾರಿ ೩೧

ಮತ್ತೆ ಶೇಷಾನ್ನದಲಿ ತೋರುತ
ತುತ್ತುಗಳ ತೂಗುತ ಮಾರುತಿ
ಮೆತ್ತಿಕೊಂಡನು ಬಾಯೊಳವನನು ಬೆರಳಲೇಡಿಸುತ
ಇತ್ತಲೆನ್ನಯ ಹಸಿವು ಹೆಚ್ಚಿದೆ
ತುತ್ತು ಹೊಗದೊಳಗಿವನ ತೊಡಗಲ
ದೆತ್ತಲಕಟಾ ವಿಧಿಯೆನುತ ಮುರಿದೆದ್ದನಮರಾರಿ ೩೨

ಎರಡು ಕೈಯನು ಬಲಿದು ಮುಷ್ಟಿಯೊ
ಳೆರಗಿದನು ಖಳ ಬೆನ್ನನೇನಂ
ದರಿಯನಿತ್ತಲು ಭೀಮ ಬಲುಂದುತ್ತುಗಳ ತೋಟಿಯಲಿ
ಮರನ ಮುರಿದೆರಗಿದರೆ ಪುನರಪಿ
ಮುರಿದು ನೋಡಿದು ಬಹೆನು ನಿಲ್ಲೆನು
ತರೆಗೆಲಸ ಪೂರೈಸಲೆಂದನು ನಗುತ ಕಲಿಭೀಮ ೩೩

ಅರಸ ಕೇಳೈ ನಿಮ್ಮ ಭೀಮನ
ಪರಿಯನಾ ಪರಿ ಬಂಡಿ ತುಂಬಿದ
ಸರಕನೆಲ್ಲವ ಸಂತವಿಟ್ಟನು ತನ್ನ ಜಠರದಲಿ
ವರ ಸಮಾಧಾನದಲಿ ಕೈದೊಳೆ
ದುರವಣಿಪ ತೇಗಿನ ತರಂಗದ
ಪರಬಲಾಂತಕನೆದ್ದು ನಿಂದನು ಸಿಂಹನಾದದಲಿ ೩೪

ಉಂಡೆವೈ ಸಮಚಿತ್ತದಲಿ ನೀವ್
ಕೊಂಡಿರೈ ಘಾಯುಗಳನೆಡೆಯಲಿ
ಹಿಂಡುವಿರಲೈ ನಾವು ಸಹಿತೀ ಊರ ಹಾರುವರ
ಉಂಡೆವೈ ಹಲ ಕಾಲಕಿಂದಿನ
ಲುಂಡದೂಟ ಕಣಾ ನಿಧಾನವು
ಖಂಡಪರಶುವಿನಾಣೆನುತ ಮದವೇರಿದನು ಭೀಮ ೩೫

ಖಾತಿಗೊಳ್ಳದ ಮುನ್ನ ಪವನಜ
ನೋತು ಕೊಟ್ಟನು ತನ್ನ ಹೊಯ್ಗಳ
ನಾತನೀತನು ಮುಳಿದು ಬಳಿಕಿವನೇನ ಮಾಡುವನೊ
ಈತನೆದ್ದನು ಗಜರಿ ಬಳಿಕಿನೊ
ಳಾತನಿದಿರಾದನು ಸುರಾರಿಯ
ವಾತಜನ ಹೋರಟೆಗೆ ಕೊರಳಳುಕಿದುದು ವಾಸುಕಿಯು ೩೬

ಹಿಡಿದರೊಬ್ಬರನೊಬ್ಬರುರದಲಿ
ಹೊಡೆದು ಹಿಂಗಿದರುಲಿದು ಹೆಮ್ಮರ
ನುಡಿಯೆ ಹೊಯ್ದಾಡಿದರು ತಿವಿದರು ತೋಳು ಬಲುಹಿನಲಿ
ಕೊಡಹಿದನು ಕಲಿ ಭೀಮನವನು
ಗ್ಗಡದ ಸತ್ವದಿಯುಂಡ ಕೂಳಿನ
ಕಡುಹ ತೋರೆಂದೊರಲಿ ತುಡಿಕಿದನನಿಲ ನಂದನನ ೩೭

ಸಿಕ್ಕಿದನು ಕಲಿಭೀಮನೆನೆ ಕೈ
ಯಿಕ್ಕಿ ಕೊಟ್ಟನು ಮೈಯನಸುರನ
ಹೊಕ್ಕು ತಿವಿದನು ತಿರುಗಿ ಬದಿಯೆಲು ನುಗ್ಗು ನುಸಿಯಾಗೆ
ಬಿಕ್ಕುಳಿಯ ತಾಳಿಗೆಯ ಮೂಗಿನೊ
ಳೊಕ್ಕು ರುಧಿರದ ಧಾರೆ ಬಿಗಿದುರೆ
ಡೊಕ್ಕರಿಸಲಸು ನೀಗಿತಸುರನ ತನುವ ನಿಮಿಷದಲಿ ೩೮

ಕೊಂದು ದನುಜನ ಪೆಣನ ಬಂಡಿಯ
ಹಿಂದೆ ಬಂಧಿಸಿ ಪುರದ ಬಾಹೆಗೆ
ತಂದು ಬಿಟ್ಟನು ತನತನಗೆ ಜನಜಾಲ ಜೋಡಿಯಲಿ
ಬಂದು ಕಂಡುದು ಹೆಣನ ಭೂಸುರ
ರಿಂದು ಧನ್ಯರು ವಿಪ್ರಜಾತಿಗೆ
ಸಂದುದಿನ್ನಗ್ಗಳಿಕೆಯೆಂದುದು ನೆರದ ಪೌರಜನ ೩೯

ಈ ಅಮಾನುಷಶಕ್ತಿಯಮರರ
ರಾಯುಗಳವಲ್ಲೆಂದು ವಿಪ್ರ ನಿ
ಕಾಯಕಿದು ಸಾಮಾನ್ಯವೇ ನಮ್ಮಗ್ರಹಾರದಲಿ
ಕಾಯಿದವರಿವರೆಂದು ವಿಪುಲ
ಶ್ರೇಯ ಪದ್ಮಜ ಸೋಮಧರ ನಾ
ರಾಯಣರು ಕೊಡಲೆಂದು ಹರಸಿತು ಭೂಸುರ ವ್ರಾತ ೪೦

ಹನ್ನೊಂದನೆಯ ಸಂಧಿ

ಸೂ. ವೀರ ಕುಂತೀ ತನುಜರಿರುಳಂ
ಗಾರವರ್ಮನ ಗೆಲಿದು ಹೊಕ್ಕರು
ಧಾರುಣೀಸುರ ವೇಷದಲಿ ಪಾಂಚಾಲ ಪಟ್ಟಣವ

ಅರಸ ಕೇಳೈ ಕಲಿ ಬಕಾಸುರ
ಮರಣ ಸಮನಂತರದೊಳಾ ಪುರ
ವರದೊಳಿರ್ದರು ವಿಮಲ ವಿಪ್ರಸ್ತೋಮದೊಡಗೂಡಿ
ವರುಷ ತುಂಬಿತು ನಮ್ಮ ಹಸ್ತಿನ
ಪುರವ ಹೊರವಂಟಂದಿನಲಿಯೆಂ
ದರಸ ಕುಂತೀದೇವಿಗೆಂದನು ಧರ್ಮಸುತ ನಗುತ ೧

ಆ ಸಮಯದಲಿ ಬಂದನೊಬ್ಬನು
ಭೂಸುರನು ಸಕುತೂಹಲನು ಬಹು
ದೇಶ ಪರಿಯಟಣ ಪ್ರವಾಸಾಭ್ಯಾಸ ಶಿಕ್ಷೆಯಲಿ
ಗ್ರಾಸ ಯಾಚಕನಾಗಿ ತಮ್ಮ ನಿ
ವಾಸದಲಿ ಸಲೆ ತುಷ್ಟನಾದ ಮ
ಹೀಸುರನ ಮಾತಾಡಿಸಿದನಂದರಸ ವಿನಯದಲಿ ೨

ಎತ್ತಣಿಂದಲಿ ಬರವು ಬಳಿಕಿ
ನ್ನೆತ್ತ ಗಮನವು ಪೂರ್ವ ಸುಕೃತವ
ಹೊತ್ತುದಿಂದಿನ ದಿವಸವಿದೆಲಾ ಸುಜನ ಸಂಸರ್ಗ
ಉತ್ತರೋತ್ತರ ಸಿದ್ಧಿಯಿಲ್ಲಿಂ
ದಿತ್ತಲೆಮಗೆನೆ ಹಸ್ತಿನಾಪುರ
ದತ್ತಣಿಂದವೆ ಬಂದೆವಾವುದು ದೇಶ ನಿಮಗೆಂದ ೩

ನಾವು ನಿಮ್ಮೋಪಾದಿಯಲಿ ತೀ
ರ್ಥಾವಲೋಕನಪರರು ಭಿಕ್ಷಾ
ಜೀವಿಗಳು ನೀವೇಸು ದಿನ ಗಜಪುರವ ಹೊರವಂಟು
ಆವನಲ್ಲಿಗೆ ಪತಿ ಯುಧಿಷ್ಠಿರ
ದೇವನೋ ದುರ್ಯೋಧನನೊ ಬಳಿ
ಕಾವುದುಂಟು ವಿಶೇಷ ಕೌರವ ಪಾಂಡುತನಯರಲಿ ೪

ಮರುಳುಗಳೊ ನೀವ್ ಮೇಣು ನಮ್ಮನು
ಮರುಳು ಮಾಡುವ ಪರಿಯೊ ಪಾಂಡವ
ರರಗು ಮನೆಯಲಿ ಬೆಂದರಿದು ಲೋಕಪ್ರಸಿದ್ಧವಲೆ
ಅರಸು ಕೌರವರಾಯನಾತನ
ಸಿರಿಯನಾತನ ಬಲುಹನಾತನ
ಪರಿಯನಭಿವರ್ಣಿಸುವಡರಿಯೆನು ವಿಪ್ರ ಕೇಳೆಂದ ೫

ಅಕಟ ಪಾಂಡವರಳಿದರೇ ಬಾ
ಧಕರೆ ಪರರಿಗೆ ಲೇಸಿನಲಿ ಕಂ
ಟಕವು ದುಗ್ಧ ವಿಷಂಗಳಲಿ ಹಾವಿಂಗೆ ಹಾನಿಯಲೆ
ವಿಕಳ ಪುಣ್ಯರು ನಿಲಲಿ ಕುರು ರಾ
ಜಕದೊಳಗೆ ಭೀಷ್ಮಾದಿ ವೃದ್ಧ
ಪ್ರಕರ ಗುರುಸುತ ಗುರು ಕೃಪಾದ್ಯರು ಕುಶಲರೇಯೆಂದ ೬

ಗುರುಸುತಾದಿ ಸಮಸ್ತ ಪರಿಜನ
ಪುರಜನಕೆ ಸುಕ್ಷೇಮ ದ್ರುಪದನ
ವರ ಕುಮಾರಿಯ ಮದುವೆ ಗಡ ಪಾಂಚಾಲ ನಗರದಲಿ
ನೆರವುತಿದೆ ನಾನಾ ದಿಗಂತದ
ಧರಣಿಪತಿಗಳು ಭೂರಿಯಲಿ ಮಿಗೆ
ಭರಿತ ದಕ್ಷಿಣೆ ಮೃಷ್ಟ ಭೋಜನವುಂಟು ನಮಗೆಂದ ೭

ಸಾರವಿದು ನೃಪಕನ್ನಿಕೆಗೆ ವರ
ನಾರು ಲಗ್ನವದೆಂದು ಬಳಿಕಾ
ಠಾರು ಬಂದರು ಭೂಪತಿಗಳಿದನೆಂದು ಕೇಳಿದಿರಿ
ಭೂರಿಯಲಿ ನಮಗುಂಟೆ ಮೃಷ್ಟಾ
ಹಾರ ದಕ್ಷಿಣೆ ನಮ್ಮಭೀಷ್ಟ ವಿ
ಹಾರ ವಾರ್ತೆಯಿದೆಂದು ಧರ್ಮಜ ನುಡಿದನಾ ದ್ವಿಜಗೆ ೮

ಇವರು ಕಪಟೋಪಾಧ್ಯರೆಂಬುದ
ನವನು ಬಲ್ಲನೆ ಭೂಮಿದೇವ
ಪ್ರವರನೈಸಲೆಯೆಂದು ಬಗೆದನು ಧರ್ಮನಂದನನ
ಅವನಿಯಲಿ ಪಾತಾಳದಲಿ ಸುರ
ಭವನದಲಿ ಪಾಂಚಾಲ ತನುಜೆಗೆ
ಯುವತಿಯರು ಸರಿಯಲ್ಲವೆಂಬುದ ಕೇಳ್ವೆವಾವೆಂದ ೯

ಈಕೆಗೆಣೆಯಹ ವರನನೀ ನರ
ಲೋಕದಲಿ ತಾ ಕಾಣೆನರ್ಜುನ
ನೀ ಕುಮಾರಿಯ ರಮಣನೆಂದೇ ಮನದ ಸಂಕಲ್ಪ
ಈಕೆಯುಪದೇಸೆಯುದಯದಲಿ ಕುಂ
ತೀಕುಮಾರಕರನಲ ಮುಖದಲಿ
ನಾಕದಲಿ ನೆಲೆಗೊಂಡರೆಂದುಮ್ಮಳಿಸುವನು ದ್ರುಪದ ೧೦

ಜ್ವಲನ ನೆರೆ ನುಂಗಿದನೊ ಮೇಣಂ
ಜಲಿಸಿ ಬಿಟ್ಟನೊ ಬಲ್ಲನಾವನು
ಕಲು ಹೃದಯನೈ ಕಮಲಭವನೀ ಪಾಂಡುನಂದನರ
ಸುಳಿವ ಸೈರಿಸನಕಟ ಹೂಹೆಗ
ಳಳಿವ ಹರೆಯುವೆ ಶಿವಶಿವಾಯೆಂ
ದಳಲುದೊರೆಯಲಿ ಮುಳುಗಿ ಮೂಡುವ ದ್ರುಪದಪತಿಯೆಂದ ೧೧

ಅರಸ ಕೇಳ್ವನು ಸಕಲ ದೈವ
ಜ್ಞರಲುಪಶ್ರುತಿಗಳಲಿ ಋಷಿಗಳ
ಪರಮ ಸಿದ್ಧಾಂತದಲಿ ಮಂತ್ರಾವೇಶವಚನದಲಿ
ಧರೆಯೊಳೀಗಳು ಪಾಂಡುಸುತ ಸಂ
ಚರಣೆಯುಂಟದು ಸತ್ಯವೆಂದುಪ
ಚರಿಸಿ ನುಡಿದು ಪುರೋಹಿತನು ಸಂತವಿಸುವನು ನೃಪನ ೧೨

ಸರಸಿಜಾನನೆ ನೋಡಿ ನೃಪರಲಿ
ವರಿಸುವಳು ವಲ್ಲಭನನೆಂದುಪ
ಚರಿಸುವನು ಸವಿವಾತುಗಳ ಸಾರಾಯ ಸೋನೆಯಲಿ
ಬರಿಸುವುದು ಬಹುದೇಶ ಭೂಮಿಾ
ಶ್ವರರನವರೊಳು ಪುಣ್ಯದಲಿ ಗೋ
ಚರಿಸರೇ ಗರುವೆಯರ ದೇವಿಗೆ ಪಾಂಡುಸುತರೆಂದ ೧೩

ಆದೊಡೀಮುಗುವಿನ ಮಹಾ ಪು
ಣ್ಯೋದಯದ ಫಲವೈಸಲೇ ಬರೆ
ಮೇದಿನೀಶ್ವರರೆಲ್ಲರಿಗೆ ಲೇಖಾರ್ಥ ಸಂಗತಿಯು
ಸೋದರರು ಸಹಿತಾ ಸುಯೋಧನ
ನಾದಿಯಾದ ಸಮಸ್ತನೃಪರು ವಿ
ವಾದವಿಲ್ಲದೆ ಬರಲಿ ಕಟ್ಟಿಸು ಪಾವುಡವನೆಂದ ೧೪

ಬರೆದ ವೋಲೆಗಳಖಿಳ ಭೂಮೀ
ಶ್ವರರಿಗುಡುಗೊರೆ ಸಹಿತ ದೂತರು
ಹರಿದರುತ್ತರ ಪೂರ್ವ ದಕ್ಷಿಣ ಪಶ್ಚಿಮಂಗಳಿಗೆ
ಧರೆಯ ಕನ್ಯಾಜನ ಶಿರೋಮಣಿ
ವರ ದ್ರುಪದ ತನುಜಾ ಸ್ವಯಂವರ
ಕರಸುಗಳು ಬಹುದೆಂದು ವಾಚಿಸಿತಖಿಳ ಲೇಖಾರ್ಥ ೧೫

ಮಾಡಿದರೆ ಶತ ಯಾಗವನು ಕೈ
ಗೂಡುವಳು ಶಚಿ ಮುಖ ಸಹಸ್ರವ
ಮಾಡಿ ಮೇಣ್ ಜನಿಸಿದೊಡೆ ಬಹಳೇ ದ್ರೌಪದಾದೇವಿ
ನೋಡುವೆವು ನಡೆ ಜನ್ಮ ಶತದಲಿ
ಕೂಡಿ ಕೊಬ್ಬಿದ ಪುಣ್ಯಫಲ ಕೈ
ಗೂಡುವುದೊ ತಪ್ಪೇನೆನೆನುತ ನೆರೆದುದು ನೃಪಸ್ತೋಮ ೧೬

ಆ ಪುರೋಹಿತ ವಚನದಲಿ ನಿ
ರ್ವ್ಯಾಪಿತಾಂತರ್ವ್ಯಥೆಯಲವನಿಪ
ನಾ ಪುರಪ್ರಾಂತ್ಯದಲಿ ಸುತ್ತಲು ಮೂರು ಯೋಜನದ
ತೋಪಿನಲಿ ಕಟ್ಟಿಸಿದನಗ್ಗದ
ಭೂಪರಿಗೆ ಭವನವನು ಕೇಳೈ
ದ್ರೌಪದಿಯ ವೈವಾಹ ರಚನಾ ರಾಮಣೀಯಕವ ೧೭

ನೆರವುತಿದೆ ನಾನಾ ದಿಗಂತದ
ಧರಣಿಪರು ಕನ್ಯಾರ್ಥಿಗಳು ಭೂ
ಸುರ ಸಮೂಹದ ಸಾಲು ನೆರೆದುದು ದಕ್ಷಿಣಾರ್ಥದಲಿ
ಎರಡರೊಳು ನಿನಗೇನು ಕನ್ಯಾ
ವರಣವೋ ಮೇಣ್ ದಕ್ಷಿಣಾರ್ಥವೊ
ಬರವು ನಿಮಗುಂಟೇಯೆನುತ ದ್ವಿಜನಿವರ ಬೆಸಗೊಂಡ ೧೮

ಈಸು ಪರಿಯಲಿ ನಮ್ಮನೀವಪ
ಹಾಸ ಮಾಡುವಿರಾವು ಭಿಕ್ಷುಕ
ರೈಸಲೇ ಕನ್ಯಾರ್ಥದಲಿ ನಾವೆತ್ತ ನೃಪರೆತ್ತ
ಐಸೆ ನಿಮ್ಮೊಡೆ ನಾವು ಬಹೆವೀ
ಭೂಸುರರ ನೆರವುಂಟಲಾ ಶುಭ
ವಾಸರವ ಬೆಸಗೊಂಬೆನೆಂದನು ಧರ್ಮಸುತ ನಗುತ ೧೯

ಇವನು ಬಳಿಕ ನಿಜ ಪ್ರಯೋಜನ
ಭವನಕೈದಿದನಖಿಳ ವಾರ್ತಾ
ವಿವರಣ ವ್ಯಾಖ್ಯಾನ ಸಮನಂತರದ ಸಮಯದಲಿ
ಇವರು ತಮ್ಮೊಳಗೆಂದರವನೀ
ದಿವಿಜಪುರದಲಿ ದೈನ್ಯವೃತ್ತಿಯ
ನಿವಹ ನಿಲಲಿ ನಿರೀಕ್ಷಿಸುವೆನಾ ದ್ರುಪದ ಪಟ್ಟಣವ ೨೦

ಆ ಲತಾಂಗಿಯ ಮದುವೆಗವನೀ
ಪಾಲ ವರ್ಗದ ಬರವು ಗಡ ಹರ
ನೊಳಿಗದ ಹೆಚ್ಚಾಳು ಮಕರಧ್ವಜನ ಮೌಳಿ ಗಡ
ಮೇಳವಹ ಕಿವಿಗಳಿಗೆ ಹಂಗಹ
ವಾಲಿಗಳು ಪರಿವಿಡಿಯ ವೇಧೆಗೆ
ಸೋಲುವವೆಯೆಂದೈವರಾಳೋಚಿಸಿದರೊಳಗೊಳಗೆ ೨೧

ಅರಸ ಚಿತ್ತೈಸವಳ ಲಗ್ನಾಂ
ತರದಲಿವರುದಯದಲಿ ಹೊರವಂ
ಟರು ಸುವಿದ್ಯಾ ಪರಿಣತರ ಪಂಡಿತರ ಗಡಣದಲಿ
ಬರುತ ಕಂಡರು ಕಳಶ ಕನ್ನಡಿ
ವರ ಯುವತಿ ಖಗ ಮೃಗದ ಬಲು ಸು
ಸ್ವರ ಸುಗಂಧಾನಿಲ ಸುಸಂಗತ ಶಕುನ ಸೂಚಕವ ೨೨

ಚಾರು ಶಕುನವಿದುತ್ತರೋತ್ತರ
ವಾರಿಗಿದು ಫಲಿಸುವುದೊ ನಮ್ಮೊಳು
ಹಾರುವರು ಹುಲು ಮೊತ್ತ ಕನ್ಯಾಲಾಭ ಫಲವಿದಕೆ
ಭೂರಿ ಭಾಗ್ಯನು ನಮ್ಮ ವಿಪ್ರರೊ
ಳಾರೆನುತ ತತ್ ಶಕುನ ಫಲ ವಿ
ಸ್ತಾರವನು ನೆರೆ ವಿವರಿಸುತ ನಡೆದುದು ಬುಧಸ್ತೋಮ ೨೩

ಧರಣಿಯಮರರ ಗಡಣದಲಿ ನಾ
ಲೆರಡು ಪಯಣಾಂತರದಲವನೀ
ಸುರರನುಳಿದಾಶ್ರಮದೊಳಗೆ ಪಾರಾಶರವ್ರತಿಯ
ದರುಶನವ ಮಾಡಿದರು ಬಕ ಸಂ
ಹರಣ ವೃತ್ತಾಂತವನು ನೆರೆ ವಿ
ಸ್ತರಿಸಿದರು ವಿನಯದಲಿ ಬೀಳ್ಕೊಂಡರು ಮುನೀಶ್ವರನ ೨೪

ಗಮನ ಭರದಲಿ ಭಾರಿಯಧ್ವ
ಶ್ರಮವ ನೋಡದೆ ಭೂಮಿ ನಭದಲಿ
ತಮದ ಚಾವಡಿಯಿಕ್ಕಿದರೆ ಗತಿ ಚಾಪಳವ ಬಿಡದೆ
ದ್ಯುಮಣಿ ಕೈಸೆರೆಯಾಗಲಟವೀ
ಭ್ರಮಣದಲಿ ಬೆಳಗಡಗೆ ಭೂಪೋ
ತ್ತಮರು ಬಂದರು ಬಹಳ ಗಮನದೊಳರ್ಧ ರಾತ್ರಿಯಲಿ ೨೫

ಮುಂದೆ ಪಾರ್ಥನ ಬೀಸುಗೊಳ್ಳಿಗ
ಳಿಂದ ತಮದಾವಳಿ ಮುರಿಯೆ ಬಳಿ
ಸಂದು ಕುಂತೀದೇವಿ ಧರ್ಮಜ ನಕುಲ ಸಹದೇವ
ಹಿಂದೆ ಭೀಮನ ಕೈಯ ಕೊಳ್ಳಿಯ
ಬಿಂದು ಬೆಳಗಿನಲನಿಬರಟವೀ
ವೃಂದದಲಿ ಬರುತಿರ್ದರಿರುಳವನೀಶ ಕೇಳೆಂದ ೨೬

ಬರುತ ಕಂಡರು ಮುಂದೆ ಗಂಧ
ರ್ವರ ವಧೂ ನಿಕುರುಂಬವನು ನೇ
ವುರದ ಝುಣ ಝುಣ ರವದ ಝೇಂಕೃತಿ ಧ್ವನಿಯ
ಅರಳುಗಂಗಳ ಬೆಳಗಿನಲಿ ತಮ
ವಿರುಳು ಬೀತುದು ಬೆಸುವುದಾಗಲೆ
ಕುರುಳ ಕಾಳಿಕೆಯಿಂದ ತತ್ಕಾಂತಾ ಕದಂಬದಲಿ ೨೭

ಲಲಿತ ತನುಕಾಂತಿಗಳ ಮೊಗೆದರು
ತಿಳಿಗೊಳನ ಜಲವೆಂದು ಕಂಗಳು
ಹೊಳೆಯ ಮರಿಮೀನೆಂದು ಹೆಕ್ಕಳಿಸಿದರು ಹಿಡುಹಿನಲಿ
ಅಲರಿದಂಬುಜವೆಂದು ವದನಕೆ
ನಿಲುಕಿ ತುಂಬಿಗಳೆಂದು ಕುರುಳಿಂ
ಗಳುಕಿ ಕೈಗಳ ತೆರೆದರತಿ ಮುಗುದೆಯರು ಖಚರಿಯರು ೨೮

ಆವರ ಮುಖಕಾಂತಿಗಳಲಂಗ
ಚ್ಛವಿಗಳಲಿ ಕಂಕಣದ ಹಾರದ
ವಿವಿಧ ರತ್ನಾಭರಣ ಕಿರಣದ ಲಲಿತ ಲಹರಿಯಲಿ
ಸವೆದುದಗ್ಗದ ತಿಮಿರವವದಿರ
ನಿವರು ಕಂಡರು ಜಲವಿಹಾರದ
ದಿವಿಜಸತಿಯರಲಾಯೆನುತ ಬರುತಿರ್ದರಡವಿಯಲಿ ೨೯

ನಾರಿಯರು ಕಂಡರು ಸುಲಜ್ಜಾ
ಭಾರದಲಿ ತಡಿಗಡೆಗೆ ಹಾಯಿದು
ಸೀರೆಗಳ ತೆರೆವಿಡಿದರಂಗೋಪಾಂಗ ಲತೆಗಳಿಗೆ
ಆರಿವರು ನಡುವಿರುಳು ದರ್ಪ ವಿ
ಕಾರದಲಿ ಕೈಕೊಳ್ಳಿರೆನುತಂ
ಗಾರವರ್ಮನು ಧನುವ ಕೊಂಡನು ನುಡಿಸಿದನು ನರನ ೩೦

ಈಸು ಭರದಲಿ ಗಮನವೆಲ್ಲಿಗೆ
ದೇಶಕಾಲವ ನೋಡದೀ ಸ
ರ್ವಾಸುರದ ಸೌರಂಭವೇನೆನೆ ಪಾರ್ಥ ನಸುನಗುತ
ದೇಶವಿದು ವನ ಕಾಲ ನಡುವಿರು
ಳೈಸಲೇ ನಿಜಕಾರ್ಯ ಸಂಗತಿ
ಗೋಸುಗವೆ ಗತಿಯೆಂದನಾ ಗಂಧರ್ವರಾಜಂಗೆ ೩೧

ನರರು ಸುಳಿವುದು ಪೂರ್ವಭಾಗದ
ಲಿರುಳಿನುತ್ತರ ಭಾಗದಲಿ ಖೇ
ಚರರು ಸುಳಿವುದು ಸೀಮೆ ಚತುರಾನನನ ಸೃಷ್ಟಿಯಲಿ
ಇರುಳಿನುತ್ತರ ಭಾಗವಿದು ನೀವ್
ನರರು ಬಹುದುದ್ದಂಡ ದರ್ಪ
ಜ್ವರಿತವಿದಕೌಷಧಿಯನೆರೆವೆನೆನುತ್ತ ತೆಗೆದೆಚ್ಚ ೩೨

ಕನಲಿ ಫಲುಗುಣನಾದಡಿದ ಕೊ
ಳ್ಳೆನುತ ಕೊಳ್ಳಿಯೊಳಿಟ್ಟನಗ್ನಿಯ
ನೆನೆದು ಮಂತ್ರಿಸಲುರಿಮುಖದ ಕಾರ್ಬೊಗೆಯ ಮೊಬ್ಬಿನಲಿ
ಹೊನಲುಗಿಡಿಗಳ ತಗಡುರಿಯ ಕೊಂ
ಡಿನಲಿ ಮುತ್ತಿತು ರಥವನಾತನ
ಧನುವನಾತನ ತನುವನಾತನ ಸರಳ ಸಾರಥಿಯ ೩೩

ಉರಿದುದಾ ರಥವವನ ಮೈಯಲಿ
ಕರಿಕುವರಿತರಲೋಡಿ ಹೊಕ್ಕನು
ಸರಸಿಯನು ಶಿಖಿಯೊಡನೆ ಹೊಕ್ಕುದು ನೀರನುರೆ ಸುರಿದು
ತರುಣಿ ಹಾಹಾ ಕೆಟ್ಟನೆಂದ
ಬ್ಬರಿಸಲಾ ಗಂಧರ್ವನಂಗನೆ
ಹರಿದಳೆಡೆಗೈಯಿಂದ ಸಂವರಿಸುತ್ತ ಬಿಡುಮುಡಿಯ ೩೪

ಬಂದು ಯಮನಂದನನ ಚರಣ
ದ್ವಂದ್ವದಲಿ ಚಾಚಿದಳು ನೊಸಲನು
ತಂದೆ ಕರುಣಿಸು ಕಾಂತಭಿಕ್ಷವ ಕರುಣಿಸೆನಗೆನಲು
ಮುಂದುವರಿಯದಿರೆಲೆ ಧನಂಜಯ
ಕೊಂದರೆನ್ನಾಣೆಕೆಯರಸನ
ತಂದು ಕೊಡು ಬೇಗದಲಿ ಉಪಸಂಹರಿಸು ಶಿಖಿಶರವ ೩೫

ಎನೆ ಹಸಾದವೆನುತ್ತ ನಿಮಿಷದೊ
ಳನಲನನು ನಂದಿಸಿದನಿತ್ತಲು
ಮನದ ದುಮ್ಮಾನದಲಿ ಲಜ್ಜಾವನತ ಮುಖನಾಗಿ
ಮನುಜರಲ್ಲಿವರಾರೊ ನೋಡುವೆ
ನೆನುತ ಹತ್ತಿರೆ ಬಂದು ನೀವಾ
ರಿನಿತು ಸಾಹಸ ಮಲ್ಲರೆಂದರ್ಜುನನ ಬೆಸಗೊಂಡ ೩೬

ನರರು ವೈದೇಶಿಗರು ಕಾರ್ಯಾ
ತುರರು ನಾವೆನಲರ್ಜುನನನುಪ
ಚರಿಸಿ ವಿವಿಧ ಗುಣಾನುಮುಖದಲ್ಲಿವರನಂಡಲೆಯೆ
ಧರೆಯೊಳುಂಟೇ ಪಾಂಡುಸುತರೆಂ
ಬರಸುಗಳು ನೀ ಕೇಳಿ ಬಲ್ಲೈ
ನಿರುತವಾದವರೆಂದು ನುಡಿದನು ನಗುತ ಕಲಿಪಾರ್ಥ ೩೭

ಶಿವ ಶಿವಾದೊಡೆ ಯಮ ಪುರಂದರ
ಪವನನಶ್ವಿನಿಯರಿಗೆ ನೀವ್ ಸಂ
ಭವಿಸಿದವರೇ ನೀವೆಮಗೆ ಸಂಭಾವನೀಯರಲ
ಇವೆ ಸಹಸ್ರ ತುರಂಗ ದಿವ್ಯೋ
ದ್ಭವವನರ್ಘ್ಯಾಭರಣರತ್ನ
ಪ್ರವರವಿವೆ ಕಾರುಣ್ಯದಲಿ ಕೈಕೊಂಬುದಿವನೆಂದ ೩೮

ಬಂದವೆಮಗಿವು ನಿನ್ನ ನಾವ್ ಬೇ
ರೆಂದು ಕಾಣೆವು ಪರಮ ಬಾಂಧವ
ರಿಂದು ಮೊದಲಾಗೆಮಗೆ ನೀನೇ ಮೌಲ್ಯಧನವೆಂದ
ಇಂದು ನಿಜರೂಪಡಗಿ ರಾಯರ
ವೃಂದವನು ನೋಡುವೆವು ದ್ರುಪದನ
ನಂದನೆಯ ವೈವಾಹ ರಚನೆಯೊಳೆಂದನಾ ಪಾರ್ಥ ೩೯

ಇವು ಮದೀಯ ಸುವಸ್ತು ನಿನ್ನಯ
ಭವನದೊಳಗಿರಲೊಂದು ಸಮಯದೊ
ಳಿವನು ತರಿಸುವೆವೆಂದು ಬಳಿಕಂಗಾರವರ್ಮಂಗೆ
ಇವರು ವಿನಯವ ಮಾಡಿ ಗಮನೋ
ತ್ಸವದಲಿರೆ ಗಂಧರ್ವ ನಸು ನಗು
ತಿವರಿಗೆಂದನು ಧರ್ಮಶಾಸ್ತ್ರದ ಸಾರ ಸಂಗತಿಯ ೪೦

ಮುನಿಯದಿರು ಕಲಿಪಾರ್ಥ ನಿನ್ನಯ
ಘನತರದ ವಿಕ್ರಮಕೆ ದಿವಿಜರು
ದನುಜ ಭುಜಗರು ನೆರೆಯರುಳಿದೀ ನರರ ಪಾಡೇನು
ಅನುಪಮಾನ ಕ್ಷತ್ರವಹ್ನಿಗೆ
ವಿನುತ ವಿಮಲ ಬ್ರಹ್ಮತೇಜೋ
ಘನ ಸಮೀರ ಸಹಾಯವಾಗಲಸಾಧ್ಯವೇನೆಂದ ೪೧

ಅರಸ ನಿಮ್ಮೊಳು ಪೂರ್ವದಲಿ ಸಂ
ವರಣನೆಂಬನು ಸೂರ್ಯತನುಜೆಗೆ
ಮರುಳುಗೊಂಡನು ಮರೆದು ಕಳೆದನು ರಾಜ್ಯವೈಭವವ
ಬರಿಯ ಪಾರ್ಥಿವತೇಜದಲಿ ಗೋ
ಚರಿಸದಿರೆ ತತ್ಸತಿ ವಿವಾಹೋ
ತ್ಕರುಷವಾಯ್ತು ವಸಿಷ್ಠನಮಲ ಬ್ರಹ್ಮತೇಜದಲಿ ೪೨

ಆ ವಸಿಷ್ಠನ ಕೌಶಿಕನ ಯು
ದ್ಧಾವಲಂಬನವೇನನೆಂಬೆನು
ದೇವಕುಲವಂಜುವುದು ವಿಶ್ವಾಮಿತ್ರನುಬ್ಬಟೆಗೆ
ಆ ವಿವಿಧ ಮಂತ್ರಾಸ್ತ್ರವನು ಶತ
ಸಾವಿರವನಾ ಬ್ರಹ್ಮದಂಡದ
ಘಾವರದಲೇ ಗೆಲಿದನೊಬ್ಬ ವಸಿಷ್ಠಮುನಿಯೆಂದ ೪೩

ಒದಗಲಾರದೆ ತನ್ನ ಸುಕ್ಷ
ತ್ರದ ಮಹತ್ವವ ಬಿಸುಟು ಸುಬ್ರ
ಹ್ಮದಲಿ ಹೊಕ್ಕನು ವಿಗಡ ವಿಶ್ವಾಮಿತ್ರಮುನಿಯಂದು
ಅದರಿನಿಂದೀ ಕ್ಷತ್ರತೇಜದೊ
ಳುದಿತ ವಿಮಲ ಬ್ರಹ್ಮವನು ಕೂ
ಡಿದೊಡೆ ಕೌತುಕವೆಂದನಾ ಗಂಧರ್ವನರ್ಜುನಗೆ ೪೪

ಇಲ್ಲಿಗಿದೆ ನಾಲ್ಕೈದು ಯೋಜನ
ದಲ್ಲಿ ಧೌಮ್ಯಾಶ್ರಮ ವಸಿಷ್ಠಂ
ಗಲ್ಲಿ ಸನ್ನಿಧಿಯಾವಸಿಷ್ಠಂಗಾತನನುಜಾತ
ಅಲ್ಲಿ ಪೌರೋಹಿತ್ಯವನು ನಿಮ
ಗೊಲ್ಲೆನೆನ್ನದೆ ಮುನಿಪ ಮಾಡಿದ
ಡೆಲ್ಲ ಲೇಸಹುದೆಂದು ಕಳುಹಿದನಿವರನಾ ಖಚರ ೪೫

ಗಮಿಸಿದರು ಬಳಿಕವರು ಧೌಮ್ಯಾ
ಶ್ರಮಕೆ ಬಂದರು ಮುನಿಪನರ್ಘ್ಯಾ
ದ್ಯಮಲ ಸತ್ಕಾರೋಚಿತವ ಕೈಕೊಂಡು ವಿನಯದಲಿ
ಎಮಗೆ ಪೌರೋಹಿತ್ಯದಲಿ ಸಂ
ಕ್ರಮಿಸಬೇಕೆಂದೊಡಬಡಿಸಿ ಭೂ
ರಮಣರಲ್ಲಿಂದೈದಿದರು ಪಾಂಚಾಲ ಪಟ್ಟಣವ ೪೬

ಹನ್ನೆರಡನೆಯ ಸಂಧಿ

ಸೂ. ಧರಣಿಪತಿ ನಿಜಸುತೆಯ ರೂಪೋ
ತ್ಕರದ ಸೌಭಾಗ್ಯದ ನಿರಂತರ
ಪರಮ ಶೋಭಾ ರಚನೆಯಲಿ ರಚಿಸಿದರು ಪಟ್ಟಣವ

ಭೂಮಿಪತಿ ಕೇಳ್ ನಿಮ್ಮ ಪಿತನ ಪಿ
ತಾಮಹರು ಧೌಮ್ಯಾಶ್ರಮಕೆ ಬಂ
ದಾ ಮುನೀಂದ್ರನ ಕೂಡಿಕೊಂಡರು ಖಚರ ವಚನದಲಿ
ರಾಮಣೀಯಕವಹ ಸುಶಕುನ
ಸ್ತೋಮವನು ವಿವರಿಸುತ ಹೊಕ್ಕರು
ಭೂಮಿಲಂಬದ ನೃಪರ ನೆರವಿಯ ದ್ರುಪದ ಪಟ್ಟಣವ ೧

ಭರದಿನೈತಂದಖಿಳ ಭೂಮಿಶಾ
ಶ್ವರರ ಚತುರಂಗ ಪದಹತ
ಧರಣಿ ನಿರ್ಗತ ರೇಣು ಪಟಲ ಪರಾಗ ಸಂಗದಲಿ
ಅರುಣಮಯವಾಯ್ತಖಿಳ ಜಗದಲಿ
ಸರಸಿಜಾಕ್ಷಿಯ ನೆನೆದು ಸಚರಾ
ಚರದ ಮುಖದಲಿ ರಾಗರಸವುಬ್ಬರಿಸಿದಂದದಲಿ ೨

ತರಣಿಗುಂಟೇ ಸಮಯವನಿಲಗೆ
ತೆರಹುಗೊಡುವವರಾರು ಗಗನೇ
ಚರರ ಗಮನಸ್ತಂಭವೆತ್ತಣ ಮಾತು ಖಗಕುಲಕೆ
ನೆರೆದ ಪಲವ ಸತ್ತಿಗೆಯ ರಝ
ಲ್ಲರಿಯ ಸಿಂಧದ ಸೆಳೆಯ ಘನ ಸೀ
ಗುರಿಯ ಸಬಳದ ಸಾಲ ಚಮರಂಗಳ ವಿಡಾಯಿಯಲಿ ೩

ಚತುರ ಉದಧೀ ವಲಯದವನೀ
ಪತಿಗಳೇ ಕಾಮಿಸಿ ವಿರೋಧ
ಸ್ಥಿತಿಯ ನೋಡದೆ ನೂಕಿ ನಡೆದರು ದ್ರುಪದಪುರಿಗಾಗಿ
ಅತಿಬಲರು ಬಹು ರಾಜಬಲ ಪ
ದ್ಧತಿಗಳನು ನೋಡುತ್ತ ಬಂದರು
ಕೃತಕ ವಿಪ್ರೋತ್ತಮರು ಭಿಕ್ಷಾವಿಹಿತ ವೃತ್ತಿಯಲಿ ೪

ತಿರುಗಿತಿದು ಪಾಂಚಾಲ ನಗರಿಯ
ಹೊರವಳಯದಲಿ ಜಲಧಿ ಮಧ್ಯದ
ಕುರುವವೋ ಪಟ್ಟಣವೊ ಮೇಣಿದು ದೈವಗತಿಗಳಲಿ
ಉರುಬಿದೊಡೆ ಪಾಂಚಾಲಭೂಪತಿ
ತರುಬಲಾಪನೆ ಮಾವತನವಿದು
ಬರಿದೆ ಹೋಗದೆನುತ್ತ ಬಂದನು ಧರ್ಮಸುತ ನಗುತ ೫

ಪುರದೊಳಗೆ ಹೇರಾಳ ಹಬ್ಬದ
ಹರಹಿನಲಿ ಬೀಡಾರ ಭಿಕ್ಷಾ
ಚರಿತರಿಗೆ ದೊರಕುವುದೆ ಗುಡಿ ಗೂಡಾರ ಸಂತತಿಗೆ
ಅರಸುಗಳು ನಾವಲ್ಲ ಭವನಾಂ
ತರವದೇಕೆಮಗೆಂದು ಘಟ ಬಂ
ಧುರದ ಶಾಲೆಯ ಹೊಕ ರಿವರು ಕುಲಾಲ ಭವನದಲಿ ೬

ಕೊಡೆ ಹೊಸ ಭಾಂಡದಲಿ ಭಿಕ್ಷವ
ಬೇಡಿ ತೊಳಲಿದರಿವರು ರಾಯರ
ಬೀಡು ಬಿಡುತಿರ್ದುದು ಬಹಳ ನಿಸ್ಸಾಳ ರಭಸದಲಿ
ಬೀಡಿವರಿಗಿದು ನೆಲನಿವರಿಗಿದು
ಮಾಡಿದರಮನೆಯಿವರಿಗಿದು ಕರು
ಮಾಡವಿವರಿಗಿದೆಂದು ಪರುಠವಿಸಿದನು ಪಾಂಚಾಲ ೭

ಕೇರಿ ಕೇರಿಯ ಬೀದಿಗಳ ಪ
ನ್ನೀರ ಚಳೆಯದ ಕಳಸ ಕನ್ನಡಿ
ತೋರಣದ ಸೂಸಕದ ಮುತ್ತಿನ ಮಕರ ತೋರಣದ
ಓರಣದ ಹೊಂಗೆಲಸದಖಿಳಾ
ಗಾರ ಪಂಕ್ತಿಯ ಸೋಮವೀಥಿಯ
ಸೂರವೀಥಿಯ ರಚನೆಯಲಿ ರಚಿಸಿದರು ಪಟ್ಟಣವ ೮

ತೀವಿದವು ಹೊಂಗೆಲಸ ಗತಿಯಲಿ
ಲೋವೆಗಳು ಚೈತನ್ಯಮಯ ಚಿ
ತ್ರಾವಳಿಯ ಬೆಸುಗೆಗಳಲೆಸೆದವು ಭವನಭಿತ್ತಿಗಳು
ಹೂವಿನರಳಿನ ಹರಹಿನಲಿ ರ
ತ್ನಾವಳಿಗಳೊಪ್ಪಿದವಗರು ಧೂ
ಮಾವಳಿಯ ಗುಂಪಿನಲಿ ಮಘಮಘಿಸಿದವು ಮೇಘಚಯ ೯

ಕಾರಣೆಯ ಕುಂಕುಮದ ಸಾದಿನ
ಸಾರಣೆಯ ನೆಲೆಕಟ್ಟುಗಳ ಕ
ರ್ಪೂರಧೂಳಿಯ ಹೊಳಹುಗಳ ಪನ್ನೀರ ಪಕ್ಕಲೆಯ
ಚಾರು ಚಳೆಯದ ಕೆಸರಿಡುವ ಕ
ಸ್ತೂರಿಗಳ ಪೂರಾಯ ಪರಿಮಳ
ಭಾರದಲಿ ಬಿರುಗಾಳಿ ಕುಸಿದುದು ಹೇಳಲೇನೆಂದ ೧೦

ಮೇಲುಕಟ್ಟಿನ ದಿವ್ಯಚಿತ್ರ ದು
ಕೂಲನಿಚಯದ ಲಾಮಂಚದ ಬ
ಲ್ಲಾಳದಡ್ಡಿಗಳೆಡೆಗೆಡೆಗೆ ರಂಜಿಸುವ ಪಟ್ಟೆಗಳ
ಮೇಲುವೊದಕೆಯ ಕರ್ಪುರದ ಹೊಂ
ಬಾಳೆಗಳ ಮಲಯಜದ ಕಂಬದ
ಸಾಲುಗಳಲೊಪ್ಪಿದುದು ಚಪ್ಪರವೆರಡು ಯೋಜನದ ೧೧

ಬಿಗಿದವೆಡೆ ಮಂಟಪದ ಬಿಂಗಾ
ರಿಗಳ ಬಿಡೆಯದ ಚಮರ ಹೊಂಗೆ
ಜ್ಜೆಗಳ ಮುಕುರದ ಘಂಟೆಗಳ ಬಂಧುರದ ಬಾಸಿಗದ
ಸುಗಮ ಬಂಧದ ಬಣ್ಣಸರದೋ
ಳಿಗಳ ಕಂಬದ ವಜ್ರಮಯ ಧಾ
ರೆಗಳಲೆಸೆದುದು ಭದ್ರಮಂಟಪವಮಲ ಮಣಿಮಯದ ೧೨

ಕೀಲಿಸಿದ ಪಟ್ಟೆಗಳ ದಿವ್ಯ ದು
ಕೂಲದಲಿ ಹೊಂಬರಹದೆಲೆಗಳ
ಜೂಳಿಕೆಯು ಕನ್ನಡಿಯ ತೋರಣವೆರಡು ಪಕ್ಕದಲಿ
ಮೇಲುಮುತ್ತಿನ ಸೂಸಕದ ನೇ
ಪಾಳ ಚಮರಿಯ ದಾಳಿಗಳ ಸಂ
ಮೇಳದಲಿ ಸಮ ತಳಿಸಿದರು ವೈವಾಹ ಮಂಟಪವ ೧೩

ಹೊಳೆವ ಭಿತ್ತಿಯ ಸಾಲಭಂಜಿಕೆ
ಗಳಲಿ ಮೌಕ್ತಿಕ ವಜ್ರಮಣಿ ಮಂ
ಗಳ ಮಹಾರಶ್ಮಿಯಲಿ ರಚನೆಯ ಚಿತ್ರಪತ್ರದಲಿ
ಇಳೆಗಿಳಿದ ಪುಷ್ಪಕವೊ ನೂತನ
ನಳಿನಮಿತ್ರನ ರಥವೊ ಮೇಣಿದು
ಜಲಧಿಶಯನನ ಸೆಜ್ಜೆಯೋ ನಾವರಿಯೆವಿದನೆಂದಾ ೧೪

ಝಳವ ರೆಛೋಂಪಿಸಿ ಬೀಸಿದವು ತಂ
ಬೆಲರ ಬೀಸಣಿಗೆಗಳು ಪರಿಮಳ
ಕಲಿತ ಮಕರಂದದ ತುಂಪಾರದ ತುಹಿನ ರೇಣುಗಳ
ಸುಳಿವ ಸುತ್ತಣ ಸಾಲಭಂಜಿಕೆ
ಗಳಲಿ ಸೂತ್ರಿಸಿ ರಚಿಸಿದರು ಮಂ
ಗಳದ ರಿಂಗಣ ಝಾಡಿಸಿತು ವೈವಾಹ ಮಂಟಪವ ೧೫

ವರ ಜವಾಜಿಯ ಶೃಂಗಗಳ ಕ
ರ್ಪುರದ ತವಲಾಯಿಗಳ ಸಾದಿನ
ಭರಣಿಗಳ ಮೃಗನಾಭಿಗಳನಡಕಿದರು ಬಂಡಿಯಲಿ
ಸುರಿಸುರಿದು ಹಂತಿಗಳ ಹೊಂಗೊ
ಪ್ಪರಿಗೆಗಳ ತುಂಬಿದರು ಗಂಧದ
ಹಿರಿಯ ರಂಜಣಿಗೆಗಳ ಹಿಡಿದರು ಸುತ್ತುವಳಯದಲಿ ೧೬

ಬಳಿಕ ಸೊದೆಗಳ ಬಾವಿಗಳ ಪ
ಕ್ಕಲೆಯ ಪನ್ನೀರುಗಳು ಹಿಡಿದವು
ಹೊಳೆವ ಕೈರಾಟಣದ ಕಾಂಚನಮಯದ ದೋಣಿಗಳ
ತುಳುಕಿ ಬಿಗಿದರು ಕೊಪ್ಪರಿಗೆಗಳ
ವಳಯದಲಿ ನವ ಯಂತ್ರಮಯ ಪು
ತ್ಥಳಿಗಳೇ ನೀಡುವವು ಬೇಡಿದರಿಗೆ ಸುವಸ್ತುಗಳ ೧೭

ಏಕ ವಿಧದ ನವಾಯಿಯೇ ಮೂ
ಲೋಕದತಿಶಯ ವಸ್ತು ರಚನಾ
ಸೌಕುಮಾರಿಯ ಸೇವೆಗಿದು ಸಾಕಾರವಾದುದಲ
ಏಕಮಯಮತ ವಿಶ್ವಕರ್ಮ
ವ್ಯಾಕರಣ ಲಕ್ಷಣದ ಲಕ್ಷ್ಯ
ನೀಕವಿದರೊಂದೊರೆಗೆ ಬಹುದೇ ಭದ್ರಮಂಟಪದ ೧೮

ವಿವಿಧ ವೀಣಾವಾದ್ಯ ಕೋಮಲ
ರವದ ಮಧುರ ಮೃದಂಗ ತತಿಗಳ
ರವಣಿಗಳ ನಟ್ಟುವಿಗರುಗ್ಗಡಣೆಯ ಗಡಾವಣೆಯ
ನವವಿಧದ ವೈತಾಳಿಕರ ವರ
ಯುವತಿಯರ ಭಾರಣೆಯ ಭೂಷಣ
ರವದ ಮೇಳವು ಮುತ್ತಿ ಮುಸುಕಿತು ಚಾರು ಚಪ್ಪರವ ೧೯

ಸಾಳಗದ ಸಮ್ಮೋಹನದ ಮಳೆ
ಗಾಲವೋ ಗೀತವೊ ರಸಾಳಿಯ
ಕಾಲುವೆಯೊ ನವಕಾವ್ಯಬಂಧದ ಸಾರಸಂಗತಿಯೊ
ಆಲಿಗಳಿಗಾಯುಷ್ಯ ಫಲ ಜೀ
ವಾಳವೋ ನರ್ತನವೊ ಸೊಗಸಿನ
ಮೇಳವಣಿಗಳ ಪಾಟಿಯಾದುದು ಜನದ ಕಣ್ಮನಕೆ ೨೦

ಶ್ರೀವಿದರು ಹೊರವಳಯದಲಿ ನಾ
ನಾ ವಿಧದ ನಾಟಕದ ನರ್ತನ
ಭಾವಕ ದ್ರಾವಕ ಸುಗಾಯಕ ಮಲ್ಲ ಚಿತ್ರಕರು
ಕೋವಿದರು ಕರುಷಕರು ಪಣ್ಯಾ
ಜೀವಿ ವಾಮನ ಮೂಕ ಬಧಿರಾಂ
ಧಾವಳಿಗಳೊಪ್ಪಿದರು ಸಕಲ ದಿಶಾ ಸಮಾಗತರು ೨೧

ಕವಿ ಗಮಕಿ ವಾದಿಗಳು ವಾಗ್ಮಿ
ಪ್ರವರ ಯಾಜ್ಞಿಕ ಮಾಂತ್ರಿಕರು ವೈ
ಷ್ಣವ ಮಹೇಶ್ವರ ಜೈನ ಭೈರವ ಬುದ್ಧ ಲಿಂಗಿಗಳು
ವಿವಿಧ ವರ್ಣಾಶ್ರಮ ಸುಧರ್ಮ
ವ್ಯವಹರಣ ನಿಷ್ಠರು ವಿವಾಹೋ
ತ್ಸವ ವಿಲೋಕನ ಕೌತುಕಿಗಳೊದಗಿದರಸಂಖ್ಯಾತ ೨೨

ಗಣಿತವಂತರ ನೆರವಿ ಸುಬ್ರಾ
ಹ್ಮಣರು ಸಂಶ್ರೋತ್ರಿಯರು ವೈದಿಕ
ಗುಣದ ವಾಚಾಲಕರು ವಿಮಲಬ್ರಹ್ಮಋಷಿ ಸಮರು
ಪ್ರಣತ ಋಷಿಗಳು ಮುನಿವರರು ಸಂ
ದಣಿಸಿತಖಿಳದಿಗಂತರದ ಧಾ
ರಣಿಯ ದೇವವ್ರಾತ ನೆರೆದುದು ದ್ರುಪದ ನಗರಿಯಲಿ ೨೩

ಅರಸ ಕೇಳೈ ಮೇಲೆ ವಿದ್ಯಾ
ಧರ ಮಹೋರಗ ಯಕ್ಷ ರಾಕ್ಷಸ
ಗರುಡಕಿನ್ನರ ಸಿದ್ಧ ವಸು ಗಂಧರ್ವ ಭೂತಗಣ
ವರ ಮರುದ್ಗಣ ರುದ್ರ ಮನು ಭಾ
ಸ್ಕರ ಸುಧಾಕರ ತಾರಕಾಗ್ರಹ
ಸುರಮುನಿಪ ದಿಕ್ಪಾಲತತಿ ನೆರೆದುದು ವಿಮಾನದಲಿ ೨೪

ಚಾರಣರ ಕೈವಾರ ತುಂಬುರ
ನಾರದರ ಸಂಗೀತ ರಂಭೆಯ
ಚಾರು ನರ್ತನ ಚಿತ್ರರಥನ ಮೃದಂಗ ಮೃದು ಶಬ್ದ
ಆರುಭಟೆ ಮಿಗಿಲಳ್ಳಿರಿವ ಜಂ
ಭಾರಿಯೋಲಗದಲಿ ತದೀಯ ಮ
ಹಾ ರಭಸವಿತರೇತರ ಪ್ರತಿಬಿಂಬವಾಯ್ತೆಂದ ೨೫

ರಚಿಸಿದರು ಮಂಟಪವನವರವ
ರುಚಿತ ವೃತ್ತಿಯೊಳವನಿಪಾಲ
ಪ್ರಚಯವನು ಮನ್ನಿಸಿದನಿವರನು ವಿಪ್ರ ಸಭೆಯೊಳಗೆ
ಪ್ರಚುರ ಮಣಿಯಿದೆ ಪದ್ಮರಾಗದ
ರುಚಿರ ರತ್ನವು ಜಾತರೂಪದಿ
ಖಚಿತವಾದೊಡೆ ಪುಣ್ಯವೆನುತಾ ದ್ರುಪದ ಚಿಂತಿಸಿದ ೨೬

ಹದಿಮೂರನೆಯ ಸಂಧಿ

ಸೂ. ಕಮಲಮುಖಿ ನಡೆತಂದಳಂದಿನ
ಕಮಲೆಯೆನೆ ಪಾಂಚಾಲಸುತೆ ನಿಜ
ರಮಣರನು ನೋಡಿದಳು ಪೃಥ್ವೀಪಾಲ ಪಂಕ್ತಿಯಲಿ

ಅರಸ ಕೇಳ್ ನಾಂದೀಮುಖದ ವಿ
ಸ್ತರಣವಾದುದು ಪೂರ್ವವೇದಿಯ
ವರ ನಿಗಮ ನಿರ್ಘೋಷ ಘಾತಿಸಿತಖಿಳ ಕಲ್ಮಷವ
ಮರುದಿವಸ ಮಹಿಳಾಶಿರೋಮಣಿ
ಪರಮಸೌಭಾಗ್ಯದ ಸಮುದ್ರದ
ಸಿರಿಯ ಪರಿಣಯವೆಂದು ಸಾರಿತು ಪಾಳಯಂಗಳಲಿ ೧

ತಿಗುರ ಗೆಲುವುದು ವಶ್ಯ ತಿಲಕಾ
ದಿಗಳನಿಡುವುದು ಮೋಹನದ ಮ
ದ್ದುಗಳ ಮಾಯೆಯ ಬೀಸುವುದು ಸೂಸುವುದು ಸೊಗಸುಗಳ
ಹಗಲು ಕಾಹಿನ ರೂಹುಗಳ ಗಾ
ಹುಗಳ ಮೆರೆವುದು ಮನ್ಮಥನ ಕಾ
ಳಗದ ಖಾಡಾಖಾಡಿಯೆಂದರು ಹೊಯ್ದು ಡಂಗುರವ ೨

ಹರಸಿಕೊಂಡರು ನಿಖಿಳ ಪೃಥ್ವೀ
ಶ್ವರರು ಮಾಯಾಪುರದ ಕಾಂಚೀ
ಪುರದ ಜಾಳಾಂಧರದ ವಿವಿಧ ಸ್ಥಾನ ದೇವರಿಗೆ
ಕರಿಮುಖನ ಕಜ್ಜಾಯದಲಿ ಸ
ತ್ಕರಿಸಿ ಸಂಶಯ ಭೇದವರ್ಗದ
ಹರುಷದಲಿ ಹೊರವಂಟರೊಬ್ಬರನೊಬ್ಬರುರವಣಿಸಿ ೩

ಉಬ್ಬು ಮುರಿದುದು ರಾಯರೊಬ್ಬರ
ನೊಬ್ಬರೀಕ್ಷಿಸಿ ಚೆಲುವಿನಲಿ ಸಿರಿ
ಗೊಬ್ಬಿನಲಿ ಸಾಹಸಿಕೆಯಲಿ ಸೇನಾಸಮುದ್ರದಲಿ
ಒಬ್ಬರೊಬ್ಬರಸೂಯೆಯೊಬ್ಬರ
ನೊಬ್ಬರಳುಕಿಸುವದಟುಗಂಗಳ
ಹಬ್ಬದಲಿ ಮನ ಸಂಚು ತಪ್ಪಿತಸಾಧ್ಯ ಚಿಂತೆಯಲಿ ೪

ಹೋರೆಗರ ಹೊಳ್ಳಿರಿತ ಜೋಯಿಸ
ರಾರುಭಟೆಗಳ ಬಿಂಕ ಮಾಂತ್ರಿಕ
ರೋರೆ ಮುಸುಕಿನ ಜಾಳು ಜಪವೀ ನೃಪರ ಚಾಳೈಸೆ
ಪೂರವಿಪ ಪುಳಕಂಗಳಲಿ ಸಿಂ
ಗಾರಿಗಳು ಸೀವರಿಸದೈತಂ
ದೋರಣಿಸಿದರು ಸಾಲ ಶೋಭಿತ ಸಿಂಹಪೀಠದಲಿ ೫

ಕೌರವರು ಯಾದವರು ಸಹಿತೀ
ಧಾರುಣಿ ಕ್ಷತ್ರಿಯರ ವಂಶದ
ವೀರ ಪಾರ್ಥಿವ ವಿತತಿ ಕುಳ್ಳಿರ್ದುದು ಸರಾಗದಲಿ
ಸಾರೆ ಸೋದರ ಸಚಿವ ಮಂತ್ರಿ ಕು
ಮಾರ ಚಾಮರ ಹಡಪದೊಳಪರಿ
ವಾರ ಬಳಸಿತುವೊಬ್ಬರೊಬ್ಬರ ಸುತ್ತ ವಳಯದಲಿ ೬

ಅಂಕೆಯಿದು ಪಾರ್ಥಿವರ ವಿಭವಾ
ಲಂಕೃತಿಯನದನೇನ ಹೇಳುವೆ
ನಂಕವಿದು ಕಳನೇರಿತಾಹವವೆನಗೆ ತನಗೆನುತ
ಶಂಕರಾರಿಯ ಮಸೆದಲಗು ಮಾ
ರಂಕದುಬ್ಬಿನ ಜಂಕೆಯಂಕೆಯ
ಬಿಂಕವನು ವಿಸ್ತರಿಸುವೆನು ನರನಾಥ ಕೇಳೆಂದ ೭

ತರಿಸು ಧನುವನು ಯಂತ್ರಮತ್ಸ್ಯವ
ನಿರಿಸು ತಳುವದೆ ತಂಗಿಯನಲಂ
ಕರಿಸು ದಂಡಿಗೆಯಿಂದ ತಾ ತೋರಿಸು ಮಹೀಶ್ವರರ
ವರನ ವರಿಸಲಿ ಲಗ್ನವಿದೆ ಹ
ತ್ತಿರೆಯೆನುತ ಪಾಂಚಾಲಭೂಪತಿ
ಕರೆದು ದೃಷ್ಟದ್ಯುಮ್ನನನು ಬೆಸಸಿದನು ಬೇಗದಲಿ ೮

ಅರಸನಾಜ್ಞೆಯ ಮೇಲೆ ಶತ ಸಾ
ವಿರ ನಿತಂಬಿನಿಯರು ಕುಮಾರಿಯ
ಹೊರಗೆ ಬಂದರು ತಿಗುರಿದರು ಕುಂಕುಮದಲವಯವವ
ಅರಸಿ ಮಜ್ಜನ ಮಾಡಿ ನೂತನ
ವರದುಕೂಲವನುಟ್ಟು ಸಖಿಯರ
ತರದ ನೆಲನುಗ್ಗಡಣೆಯಲಿ ಬಂದಳು ನಿಜಾಲಯಕೆ ೯

ಹೊರೆಯ ಸಖಿಯರ ನೋಟ ಮೈಯಲಿ
ಹರಿದು ಬಳಲದು ಚಿತ್ರವೀಕೆಯ
ಧರಿಸಿ ಕುಸಿಯದು ಕಿವಿಗಳಿಗೆ ಮೆಲ್ನುಡಿಯ ಸವಿಸವಿದು
ಅರುಚಿಯಾಗದು ನಾಸಿಕವು ಮೈ
ಪರಿಮಳದ ಪೂರದಲಿ ಗಂಧಾಂ
ತರಕೆ ನೆರೆಯದು ರೂಪವೇನೆಂಬೆನು ನಿತಂಬಿನಿಯ ೧೦

ಮೊಲೆಗಳಲಿ ಸಿಲುಕಿದೊಡೆ ನೋಟಕೆ
ಬಳಿಕ ಪುನರಾವರ್ತಿಯೋ ಕಂ
ಗಳಿಗೆ ಕಾಮಿಸಿದರೆಯು ನಿಮಿಷಕೆ ಸಮಯವೆಲ್ಲಿಹುದು
ಲಲಿತ ಮೈಕಾಂತಿಗಳೊಳದ್ದರೆ
ಮುಳುಗಿ ತೆಗೆವವರಾರು ಜಘನ
ಸ್ಥಳಕೆ ಮುರಿದರೆ ಮರಳದಲೆ ಕಂಗಳಿಗೆ ಹುಸಿಯೆಂದ ೧೧

ಹೊಲಬುಗೆಡವೇ ಹೊಳೆವ ವಕ್ಷ
ಸ್ಥಳದೊಳಗೆ ಜನದೃಷ್ಟಿ ನಳಿತೋ
ಳ್ಗಳಲಿ ಸೆಳ್ಳುಗುರೋಳಿಯಲಿ ಕೆಂದಳದ ಶೋಭೆಯಲಿ
ಸುಳಿದಡಲ್ಲಿಯೆ ನಿಲುವು ದಶನಾ
ವಳಿಯ ಬಿಂಬಾಧರದ ಕದಪಿನ
ಚೆಲುವಿಕೆಗೆ ನರರಾಲಿ ನೆರೆಯವು ನೃಪತಿ ಕೇಳೆಂದ ೧೨

ಅಸಿಯ ನಡುವಿನ ನಿಮ್ನ ನಾಭಿಯ
ಮಸುಳ ಬಾಸೆಯ ತೋರ ಮೊಲೆಗಳ
ಮಿಸುಪ ತೊಡೆಗಳ ಚಾರು ಜಂಘೆಯ ಚರಣಪಲ್ಲವದ
ಎಸಳುಗಂಗಳ ತೊಳಗಿ ಬೆಳಗುವ
ಮುಸುಡ ಕಾಂತಿಯ ಮುರಿದ ಕುರುಳಿನ
ಬಿಸಜ ಗಂಧಿಯ ರೂಪನಭಿವರ್ಣಿಸುವಡರಿದೆಂದ ೧೩

ಪೂಸುವರೆ ಕತ್ತುರಿ ಜವಾಜಿಗ
ಳೈಸಲೇ ಪರಿಮಳವು ಪೂಸದೆ
ಸೂಸಿ ದೆಸೆ ಕಂಪಿಡುತ ಮಘಮಘಿಸುವಳು ಯೋಜನವ
ಈ ಸಮಸ್ತ ಮನುಷ್ಯಧರ್ಮದ
ದೋಷಗರ್ವಿತ ಧಾತುಗಳ ವಿ
ನ್ಯಾಸವೇ ದ್ರೌಪದಿಯ ಭಾವದ ಭಂಗಿ ಬೇರೆಂದ ೧೪

ಬೆರಳ ಚೆಲ್ವಿಕೆಯಿಂದ ಮುದ್ರಿಕೆ
ಮೆರೆಯೆ ಪಾಡಗ ನೇವುರಂಗಳು
ಕರ ಚರಣ ಸೌಂದರ್ಯದಲಿ ಬಲುಮೊಲೆಯ ಢಾಳದಲಿ
ಕೊರಳ ಮುತ್ತಿನಹಾರ ಸುಮನೋ
ಹರದ ಕದಪುಗಳಿಂದ ಕರ್ಣಾ
ಭರಣವೊಪ್ಪಿದವೇನನೆಂಬೆನು ರೂಪನಂಗನೆಯ ೧೫

ಎಸೆವಧರ ರಾಗದಲಿ ಮಿಗೆ ರಂ
ಜಿಸುವವೊಲ್ ಮಾಣಿಕ್ಯ ಮೆರೆದವು
ದಶನ ದೀಧಿತಿಯಿಂದ ಥಳಥಳಿಸಿದವು ಮುತ್ತುಗಳು
ಮಿಸುಪ ದೇಹಚ್ಛವಿಗಳಲಿ ಥಾ
ಳಿಸುವವೊಲ್ ಭೂಷಣದ ಹೇಮ
ಪ್ರಸರ ಮೆರೆದವು ಹೊಗಳೆ ಕವಿ ಯಾರಬುಜಲೋಚನೆಯ ೧೬

ಪರಿಮಳದ ಪರಮಾಣುಗಳ ಸಂ
ವರಿಸಿ ಮುಕ್ತಾಫಲದ ಕೆಂದಾ
ವರೆಯ ಮರಿದುಂಬಿಗಳ ವರ್ಣಾಂತರವನಳವಡಿಸಿ
ಸರಸ ವೀಣಾ ಧ್ವನಿಯ ಹಂಸೆಯ
ಗರುವ ಗತಿಗಳನಾಯ್ದು ಮನ್ಮಥ
ವರ ವಿರಿಂಚಿಯ ಸೃಜಿಸಿದನು ಪಾಂಚಾಲ ನಂದನೆಯ ೧೭

ಸರಸ ಲಾವಣ್ಯಾಂಬುಮಯ ತನು
ಸರಸಿಯಲಿ ಮುಳುಗಿರ್ದ ಯೌವನ
ಕರಿಯ ಕುಂಭಸ್ಥಳವೊ ವಿಪುಳ ಪಯೋಧರ ದ್ವಯವೊ
ತರಳನಯನವೊ ಶಫರಿಗಳೊ ತಾ
ವರೆಯೊ ಮುಖವೋ ತುಂಬಿಗಳೊ ನಿರಿ
ಗುರುಳುಗಳೊ ಮಣಿಗಣವೊ ರದನವೊ ಚಿತ್ರವಾಯ್ತೆಂದ ೧೮

ರಾಜಸೂಯದ ಕರ್ತೃವೋಲ್ ಜಿತ
ರಾಜಮಂಡಲವಾಯ್ತು ಮುಖವಿದು
ರಾಜರಾಜನ ಪೋಲ್ದುದಳಕಾವೇಷ್ಟಿ ತತ್ವದಲಿ
ರಾಜನುದ್ಯಾನದವೊಲಾಸ್ಯ ಸ
ರೋಜವಾಯ್ತು ತಮಾಲಪತ್ರ ವಿ
ರಾಜಿತವು ಜನಮೇಜಯ ಕ್ಷಿತಿಪಾಲ ಕೇಳೆಂದ ೧೯

ಜನಪ ಕೇಳುಂಪಲಾಲಿತಾಂಜನ
ವೆನೆ ಜಿತಾಕ್ಷ ವಿಪಕ್ಷವಾದವು
ವಿನುತ ಕರ್ಣ ಪ್ರಣಯಗಳು ವೃಷಸೇನ ವೈರದಲಿ
ಜನವಿಡಂಬನ ತಾರಕಾ ಮುಂ
ಡನ ಕದರ್ಥಿತ ಕುಮುದವೆನೆ ಲೋ
ಚನ ಯುಗಳವೊಪ್ಪಿದವು ವರ ಪಾಂಚಾಲನಂದನೆಯ ೨೦

ಏನನೆಂಬೆನು ಮನಸಿಜನ ಮದ
ದಾನೆಯನು ಮನ್ಮಥನ ರತ್ನ ನಿ
ಧಾನವನು ಟಿಪ್ಪಣವನಂಗಜ ಮಂತ್ರ ಸೂತ್ರಕದ
ಮಾನಿನಿಯರಧಿದೈವವನು ಸು
ಜ್ಞಾನಕನ್ಯಾ ಮಾತೃಭವನ
ಸ್ಥಾನವನು ಮೂಲೋಕ ಮೋಹನವಶ್ಯ ಚಿತ್ರಕವ ೨೧

ನಾರಿಯನು ಸಂಸಾರಸುಖ ಸಾ
ಕಾರಿಯನು ಜನ ನಯನ ಕಾರಾ
ಗಾರಿಯನು ಮುನಿಧೈರ್ಯ ಸರ್ವಸ್ವಾಪಹಾರಿಯನು
ಧೀರರಿಗೆ ಮಾರಂಕವನು ವರ
ಪಾರಿಕಾಂಕ್ಷಿಯ ಚಿತ್ತಚೌರ್ಯ ವಿ
ಹಾರಿಯನು ದ್ರೌಪದಿಯನಭಿವರ್ಣಿಸುವಡಾರೆಂದ ೨೨

ನಳಿನಮುಖಿಯರ ಸಕಲಸೃಷ್ಟಿಗೆ
ಕಳಸವಿದು ಸೌಂದರ್ಯ ವಸನದ
ವಿಲಸವಿದು ರತಿರಮಣ ವೈಭವ ರತ್ನಕೋಶವಿದು
ಲಲನೆಯರ ಸೀಮಂತಮಣಿ ಜಗ
ದೊಳಗೆ ಚೆಲುವಿನ ಕಣಿ ತಪೋಧನ
ಕಳಭರಿಗೆ ಸೃಣಿಯೆನಲು ಮೆರೆದುದು ರೂಪವಂಗನೆಯ ೨೩

ಹೊಳೆ ಹೊಳೆದುದಾಭರಣ ರತ್ನಾ
ವಳಿಯ ರುಚಿ ತನ್ಮಣಿ ರುಚಿಯ ಮು
ಕ್ಕುಳಿಸಿತಂಗಚ್ಛವಿ ತದಂಗ ಪ್ರಭೆಯನಡಹಾಯ್ದು
ಥಳಥಳಿಸಿದುದು ವದನ ಮುಖ ಮುಂ
ಡಲದ ಕಾಂತಿಯನೊದೆದು ಕಂಗಳ
ಬೆಳಗು ವಿಸಟಂಬರಿದುದೇನೆಂಬೆನು ನಿತಂಬಿನಿಯ ೨೪

ಕಂಗಳಲಿ ಕುಡಿಮೀಳ ಹುಬ್ಬಿನ
ಹೊಂಗಿನಲಿ ಭಂಜವಣೆ ಭಾವದ
ಭಂಗಿಯಲಿ ಪತಿಕರಣೆ ಸಕಲ ಸಖೀ ಕದಂಬದಲಿ
ಇಂಗಿತದ ಬಿರಿಮುಗುಳ ಪರಿಮಳ
ವಂಗಹಾರ ವಿಲಾಸ ವಿಭ್ರಮ
ಭಂಗಿಗಳು ಬಿಬ್ಬೋಕ ಲಲಿತಾದಿಗಳು ದ್ರೌಪದಿಯ ೨೫

ವರ ವಸಂತನ ಬರವು ಜಾಜಿಯ
ಬಿರಿಮುಗುಳು ಮರಿದುಂಬಿಗಳ ನಯ
ಸರದ ದನಿ ಕರಿ ಕಳಭಲೀಲೆ ನವೇಕ್ಷು ರಸಧಾರೆ
ಮೆರೆವವೊಲ್ ಹೊಸ ಹೊಗರ ಜವ್ವನ
ಸಿರಿಯ ಜೋಡಣೆ ಜನಮನವನಾ
ವರಿಸಿದುದು ನಿಪ್ಪಸರದಲಿ ಪಾಂಚಾಲನಂದನೆಯ ೨೬

ಆರತಿಗಳೆತ್ತಿದರು ಬಳಿಕ
ಪ್ಪಾರತಿಯ ಹಾಯ್ಕಿದರು ಮುತ್ತಿನ
ಸಾರ ಸೇಸೆಯ ಸೂಸಿ ಹರಸಿ ಸುವಾಸಿನೀ ನಿಕರ
ಚಾರು ಮುಕುರವ ನೋಡಿ ನಿಂದಳು
ಭಾರಣೆಯ ಗರುವಾಯಿಯಲಿ ಜಂ
ಬೀರ ಫಲವನು ಕೊಂಡಳಂಗನೆ ವಿಪ್ರಮಂತ್ರದಲಿ ೨೭

ಮುಂದೆ ಪಾಯವಧಾರು ಸತಿಯರ
ಸಂದಣಿಯ ಸಾಲಿನಲಿ ದಂಡಿಗೆ
ಗಿಂದುಮುಖಿ ಬಂದಳು ಸಿತಾಬ್ಜಕೆ ಲಕ್ಷ್ಮಿಯಂದದಲಿ
ಹಿಂದೆ ಮುಂದಿಕ್ಕೆಲದ ನಾರೀ
ವೃಂದ ನೆರೆದುದು ವೀರಪಟಹದ
ದುಂದುಭಿಯ ಡಂಬರದ ರವವಳ್ಳಿರಿದುದಂಬರವ ೨೮

ಸಾಲ ಝಲ್ಲರಿ ಮುಸುಕಿದವು ಸಮ
ಪಾಳಿಯಲಿ ಸೀಗುರಿಗಳಾಡಿದ
ವಾಲಿಯವಗಾಹಿಸದು ನೆಲನೆನಿತನಿತು ವಳಯದಲಿ
ಬಾಲೆಯರ ಮುಗ್ಧೆಯರನತಿ ಘಾ
ತಾಳೆಯರ ಕಡೆಗಣ್ಣ ಥಾಳದ
ಚಾಳಿಯರ ಚದುರೆಯರನಲ್ಲದೆ ಕಾಣೆ ನಾನೆಂದ ೨೯

ನಿರಿದಲೆಯ ಚೊಲ್ಲೆಯದ ತುಂಬಿಯ
ಮರಿಗುರುಳ ಬೈತಲೆಯ ಮುತ್ತಿನ
ಹೆರೆನೊಸಲ ನಿಡು ಹುಬ್ಬುಗಳ ಥಾಳಿಸುವ ಕದಪುಗಳ
ತುರುಗೆವೆಯ ನಿಟ್ಟೆಸಳುಗಂಗಳ
ಮೆರೆವ ಸುಲಿಪಲ್ಲುಗಳೆಸೆವ ನು
ಣ್ಗೊರಳ ನಳಿತೋಳುಗಳ ನೀರೆಯರೈದಿತೊಗ್ಗಿನಲಿ ೩೦

ತೋರ ಮೊಲೆಗಳ ನಲಿವನಡು ಪೊರ
ವಾರಗಳ ನುಣ್ದೊಡೆಯ ಕಿರುದೊಡೆ
ಯೋರಣದ ಹಾವುಗೆಯ ಹೆಜ್ಜೆಯ ಹಂಸೆಗಳ ಗತಿಯ
ನೀರೆಯರ ಮೈಗಂಪುಗಳ ತನಿ
ಸೂರೆಗೆಳಸುವ ತುಂಬಿಗಳ ಕೈ
ವಾರಗಳ ಕಡು ಗರುವೆಯರ ನೆರೆದುದು ಸಖೀನಿವಹ ೩೧

ಕೀಲ ಕಡಗದ ವಜ್ರಲಹರಿಯ
ಜೋಲೆಯದ ಕಂಕಣದ ರವೆಯದ
ತೋಳಬಂದಿಯ ಕೊರಳ ತ್ರಿಸರದ ಬೆರಳ ಮುದ್ರಿಕೆಯ
ನೀಲರತುನದ ಪದಕ ಮಾಣಿಕ
ದೋಲೆಗಳ ಮೂಗುತಿಯ ಮುತ್ತಿನ
ಮೇಲು ಶೃಂಗಾರದ ಸಖೀಜನ ಸಂದಣಿಸಿತಲ್ಲಿ ೩೨

ವಿಲಸದೇಕಾವಳಿಯ ಮುತ್ತಿನ
ತಿಲಕ ಸೂಡಗ ಪಾಯವಟ್ಟದ
ಲಲಿತಬಂಧದ ವಜ್ರಲಹರಿಯ ತಾರಕಾವಳಿಯ
ಹೊಳೆವ ಕಾಂಚಿಯ ಕಿಂಕಿಣಿಯ ಸಂ
ಕುಲದ ನೇವುರ ವೀರ ಮುಂದಾ
ವಳಿಯ ಚರಣಾಭರಣದಬಲೆಯರೈದಿತೊಗ್ಗಿನಲಿ ೩೩

ಭ್ರೂಲತೆಯ ಖಿಲುಗಳ ಕಟಾಕ್ಷದ
ಕೋಲ ಹೊದೆಗಳ ಬಾಸೆಗಳ ಕರ
ವಾಳಿಗಳ ಕತ್ತುರಿಯ ತಿಲಕದ ಹರಿಗೆ ಹಲಗೆಗಳ
ತೋಳುಗಳ ಲೌಡಿಗಳ ಸೆಳ್ಳುಗು
ರೋಳಿಗಳ ಸುರಗಿಗಳ ಮನ್ಮಥ
ನಾಳು ನಡೆದುದು ದ್ರೌಪದಿಯ ದಂಡಿಗೆಯ ಬಳಸಿನಲಿ ೩೪

ತೋರ ಮೊಲೆಗಳ ದಂತಿ ಘಟೆಗಳ
ಚಾರು ಜಘನದ ಜೋಡಿಸಿದ ಹೊಂ
ದೇರುಗಳ ಸುಳಿಗುರುಳುಗಳ ಝಲ್ಲರಿಯ ಝಾಡಿಗಳ
ಚಾರುನಯನದ ಚಪಲಗತಿಗಳ
ವಾರುವಂಗಳ ಮೇಲುವಸನದ
ಸಾರಸಿಂಧದ ಸೇನೆ ನಡೆದುದು ಸತಿಯ ಬಳಸಿನಲಿ ೩೫

ಯತಿಗಳಿಗೆ ಮೊನೆದೋರಿ ತಣಿಸದು
ವ್ರತಿಗಳಿಗೆ ಬೀರುತ ಸಮಾಧಿ
ಸ್ಥಿತರ ಮೂಗಿನ ಮೇಲಡಾಯುಧ ಧಾರೆಗಳನೆಳೆದು
ಶ್ರುತಿವಿಹಿತ ಸತ್ಕರ್ಮಿಗಳ ದೀ
ಕ್ಷಿತರ ಮತಿಯಲಿ ತಮ್ಮ ಮುದ್ರಾಂ
ಕಿತವನೊತ್ತುತ ಮೀರಿ ನಡೆದುದು ಯುವತಿಜನ ಕಟಕ ೩೬

ಆರು ನಿಲುವರು ಸಮ್ಮುಖಕೆ ಮದ
ನಾರಿಯರ್ಧದ ನಾರಿ ಹರಿ ತಾ
ಹೇರುರದ ಹೆಂಗುಸುರೆ ಬೊಮ್ಮನು ಮಗಳ ಮೊರೆಗೇಡಿ
ಘೋರವದು ಸುರಪತಿಯ ಕಥೆ ಮೈ
ಯಾರೆ ಹೊತ್ತನು ಮದನ ಮುದ್ರಾ
ಧಾರಿಯೆಂಬವೊಲೊದರಿದವು ಮುಂಗುಡಿಯ ಕಹಳೆಗಳು ೩೭

ಪಸರಿಸಿತು ತಂಬೆಲರು ಬೀತುದು
ಬಿಸಿಲ ಬಿಂಕ ಸರೋಜ ಸಂತತಿ
ಮುಸುಳಿದವು ಮದವೇರಿ ಮೆರೆದವು ತಾರಕಾ ನಿವಹ
ಒಸರಿದವು ಶಶಿಕಾಂತ ನೈದಿಲ
ಹಸರ ಹರಿದುದು ಚಕ್ರವಾಕದ
ಬೆಸುಗೆ ಸಡಲಿತು ಚಾರು ಚಂದ್ರಾನನೆಯ ಬರವಿನಲಿ ೩೮

ಹೊಳೆವ ಕಂಗಳ ಬೆಳಗಿನಲಿ ಕ
ತ್ತಲಿಸಿದವು ಕಾಮುಕರ ಮುಖ ತನು
ವಳಯ ಕಾಂತಿಯ ತಂಪಿನಲಿ ಬಾಡಿದವು ಬುದ್ಧಿಗಳು
ಲಲಿತವಿಭ್ರಮದಿಂದಹಂಕೃತಿ
ಶಿಲೆಗಳೊಡೆದವು ಮೋಹನದ ಹೊ
ಯ್ಲೊಳಗೆ ಹೊಳೆದಡಗಿದವು ಚಿತ್ತ ಮಹಾಮಹೀಶ್ವರರ ೩೯

ತರುಣಿಯರ ನವನೀಲ ಮಣಿಗಳ
ಕುರುಳ ಕಬರಿಯ ಭರದ ವರ ಕ
ಸ್ತುರಿಯ ತಿಲಕದ ಕಾಳಿಕೆಯ ಘನಕಾಂತಿಗಳ ಲಹರಿಗಳ
ಕೊರಳಹಾರದ ಕರ್ಣಪೂರದ
ಸರದ ಮೌಕ್ತಿಕ ರುಚಿಯ ಯಮುನಾ
ಸುರನದಿಯ ಸಂಗದಲಿ ಮುಳುಗಿತು ಸಕಲ ನೃಪ ನಿಕರ ೪೦

ಪರಿಮಳಕೆ ಮಿಗೆ ಕವಿವ ತುಂಬಿಗೆ
ಕೆರಳುವರು ಹುಬ್ಬಿನಲಿ ಪದ ನೇ
ವುರದ ನುಣ್ದನಿಗೆಳಸಿ ಮುತ್ತುವ ರಾಜಹಂಸೆಗಳ
ಹೊರೆಯ ಕೆಳದಿಗೆ ದೂರುವರು ಕೈ
ಯರಗಿಳಿಗೆ ತಮ್ಮಧರ ಬಿಂಬದ
ಮುರಿವರಿದು ಮುಖದಿರುಹುವರು ಮುಗ್ಧಾಂಗನಾನಿವಹ ೪೧

ಕಂಗಳೋರೆಯ ಥಾಳಿಸುವ ಹಾ
ಸಂಗಿಗಳ ಬಿಗುಹಿನ ದುಹಾರದ
ಭಂಗಿಗಳ ಬಲು ವಿಟರ ಕರಣದ ಸಾರಿಗಳ ಸೆರೆಯ
ಮುಂಗುಡಿಯ ನಿಜನಾರಿಯರ ಕವಿ
ವಂಗವಣೆಗಳ ಜೂಜುಗಾತಿಯ
ರಂಗನೆಯ ದಂಡಿಗೆಯ ಬಳಿವಿಡಿದರು ವಿದಗ್ಧೆಯರು ೪೨

ಹಾವುಗೆಯ ಸೀಗುರಿಯ ವರ ಚಮ
ರಾವಳಿಯ ಕರ್ಪೂರಗಂಧದ
ಹೂವುಗಳ ಕತ್ತುರಿಯ ಸಾದು ಜವಾಜಿ ಕುಂಕುಮದ
ತೀವಿದನುಪಮ ಭಾಜನ ವ್ಯಜ
ನಾವಳಿಯ ಕನ್ನಡಿಯ ವಿವಿಧ ಸ
ಖೀ ವಿಳಾಸಿನಿಯರ ಕದಂಬಕವೈದಿತೊಗ್ಗಿನಲಿ ೪೩

ಧರಣಿಪತಿ ಕೇಳಖಿಳ ಪೃಥ್ವೀ
ಶ್ವರರ ಬಹಳಾಸ್ಥಾನದಲಿ ಮೋ
ಹರಿಸಿದರು ಮೋಹನದ ಮೋಡಾಮೋಡಿಯಬಲೆಯರು
ಅರಸುಗಳ ನಿಡುನೋಟವಲ್ಲಿಯ
ಗರುವೆಯರ ನಸುನೋಟ ತಮ್ಮೊಳು
ಬೆರಸಿ ಹೊಯ್ದಾಡಿದವು ಖಾಡಾಖಾಡಿಯಂದದಲಿ ೪೪

ದಾಯ ತಪ್ಪಿತು ಗರುವರಾಟ ವಿ
ಡಾಯಗೆಟ್ಟಿತು ವಿಟರಯೆನೋಟ ನ
ವಾಯಿಕಾರರ ಕೂಟ ಕುಸಿದುದು ಮಾರ ಶರಹತಿಗೆ
ಘಾಯವಡೆದುದು ಧೃತಿಯಘಾಟ ನ
ವಾಯಿ ಹೆಚ್ಚಿತು ಮತ್ತೆ ಬೇಟ ವ
ರಾಯತಾಕ್ಷಿಯ ಕೂಟಕೆಳಸುವ ಚದುರ ಭೂಮಿಪರ ೪೫

ಕೆಲಕಡೆಯ ಕೆಳದಿಯರ ಕಂಗಳ
ಹೊಳಹು ದುವ್ವಾಳಿಯಲಿ ಸುಮತಿ
ಸ್ಖಲಿತ ಕೆಂಧೂಳಿಯಲಿ ಮಾಸಿತು ಮನದ ಮಡಿವರ್ಗ
ಒಳಗೆಯೊತ್ತುವ ಧಗೆಯ ಹೊರಗಣ
ತಳಿತ ಬಿಮ್ಮಿನ ನಗೆಯ ನೃಪ ಮಂ
ಡಲದ ಮೌಳಿಯನೇನನೆಂಬೆನು ರಾಯ ಕೇಳೆಂದ ೪೬

ಚೆಲುವಿಕೆಯ ಚೈತನ್ಯವೋ ಪರಿ
ಮಳದ ಪುತ್ಥಳಿಯೋ ಲತಾಂಗಿಯ
ಸುಳಿವೊ ಲಾವಣ್ಯೈಕ ರಸ ಸಾಕಾರ ವಿಭ್ರಮವೊ
ಲಲಿತ ಶೃಂಗಾರಾಬ್ಧಿ ಮಥನೋ
ಚ್ಚಲಿತ ಸುಧೆಯೋ ಸಾಧಕರಿಗಿದು
ಫಲಿಸಿದರೆ ಕೃತಕೃತ್ಯರವರೆಂದುದು ಸುರಸ್ತೋಮ ೪೭

ಈಕೆಯಂದುದಿಸಿದರೆ ಮದನಂ
ಗೇಕೆ ದೇಹತ್ಯಾಗವಹುದು ಪಿ
ನಾಕಿ ತಾ ವೈರಾಗ್ಯದಲಿ ಹೊಗುವನೆ ತಪೋವನವ
ಸಾಕು ಗೌತಮಮುನಿಯ ಮುಳಿಸಿನ
ಕಾಕು ನುಡಿ ಫಲಿಸುವುದೆಯೆನುತಾ
ನಾಕಪತಿ ರಂಭಾದಿ ಸತಿಯರ ನೋಡಿದನು ನಗುತ ೪೮

ತಂದರಾ ಪಾಂಚಾಲೆಯನು ಹೊ
ನ್ನಂದಣದಲಾಸ್ಥಾನ ಸೀಮೆಗೆ
ಮುಂದೆ ಸಿಂಹಾಸನದ ಸಾಲ ಮಹಾಮಹೀಶ್ವರರ
ಸಂದಣೆಯಲವರವರನಿವರಿವ
ರೆಂದು ವಿವರಿಸಬೇಕೆನುತ ನೃಪ
ನಂದನನು ಹೊದ್ದಿದನು ಕಮಲಾನನೆಯ ದಂಡಿಗೆಯ ೪೯

ತಂಗಿ ನೋಡೌ ತಾಯೆ ನಿನ್ನಯ
ಕಂಗಳೊಲಿವರೆ ಚಿತ್ತವಾರ್ಥಿತ
ರಂಗದಲಿ ತೂಗುವರೆ ತೋರುವೆನವನಿಪಾಲಕರ
ಇಂಗಿತದಲವರಂತರಂಗವ
ನಂಗವಟ್ಟದ ಬಳಕೆಯನು ಬಹಿ
ರಂಗದಲಿ ನೀನರಿಯೆನುತ ನುಡಿದನು ನಿಜಾನುಜೆಗೆ ೫೦

ಈತ ದುರ್ಯೋಧನ ಮಹೀಶ್ವರ
ನೀತ ದುಶ್ಶಾಸನನು ದುರ್ಜಯ
ನೀತ ದುಶ್ಶಳನೀತ ದುಸ್ಸಹನೀತ ಚಿತ್ರರಥ
ಈತ ದುರ್ಮದನೀತ ಚಿತ್ರಕ
ನೀತಗಳು ಕುರುವಂಶದಲಿ ವಿ
ಖ್ಯಾತರಬಲೆ ನಿರೀಕ್ಷಿಸಾ ಧೃತರಾಷ್ಟ್ರನಂದನರ ೫೧

ನೋಡಳವರನು ನುಡಿಸಲೀತನ
ಕೂಡೆ ಭಾವದೊಳಿವರ ಕೊಡಹೀ
ಡಾಡಿದಳಲಾಯೆನುತ ಧೃಷ್ಟದ್ಯುಮ್ನ ನಸುನಗುತ
ನೋಡು ತಂಗಿ ವಿರಾಟನುತ್ತರ
ಗೂಡಿ ಕೀಚಕರನು ಶ್ರುತಾಯುಧ
ಮೂಡಣರಸುಗಳನು ರವಿಧ್ವಜ ರೋಚ ಮಾನಕರ ೫೨

ನೀಲ ಚಿತ್ರಾಯುಧನು ದಕ್ಷಿಣ
ಚೋಳ ಕೇರಳ ಪಾಂಡ್ಯ ಧರಣೀ
ಪಾಲಕರೊಳೀ ಚಂದ್ರಸೇನ ಸಮುದ್ರಸೇನಕರು
ಲೋಲನಯನೆ ಕಳಿಂಗಧರಣೀ
ಪಾಲನೀತನು ಚೇಕಿತಾನ ನೃ
ಪಾಲನೀತನು ಭಾನುದತ್ತಮಹೀಶ ನೋಡೆಂದ ೫೩

ಇತ್ತಲೀಕ್ಷಿಸು ಪೌಂಡ್ರಕನ ಭಗ
ದತ್ತನನು ಕಾಂಭೋಜನನು ಹರ
ದತ್ತನನು ವರಹಂಸ ಡಿಬಿಕರ ಮಾದ್ರಭೂಪತಿಯ
ಇತ್ತಲು ಜರಾಸಂಧ ಮಣಿಮಾ
ನಿತ್ತ ಸಹದೇವನು ಬೃಹದ್ರಥ
ನಿತ್ತಲೀತನು ದಂಡಧಾರಕ ನೃಪನು ನೋಡೆಂದ ೫೪

ಭೂರಿ ಭೂರಿಶ್ರವನು ದಕ್ಷಿಣ
ವೀರಬಾಹ್ಲಿಕ ವಿಂಧ್ಯ ಚಿತ್ರ ಭ
ಗೀರಥನು ನೃಪವರ ಜಯದ್ರಥ ಶಿಬಿ ಶ್ರುತಾಯುಧರು
ವೀರ ವೃದ್ಧಕ್ಷತ್ರ ಸೃಂಜಯ
ಚಾರು ಭುಜಬಲ ಸೋಮದತ್ತ ಮ
ಹೀರಮಣರಿವರಿತ್ತಲಿದೆ ತರಳಾಕ್ಷಿ ನೋಡೆಂದ ೫೫

ಈತ ರುಕ್ಮಾಂಗದ ಜಯದ್ಬಲ
ನೀತ ಶ್ರುತಸೇನಾಚ್ಯುತಾಯುಧ
ರೀತಗಳು ನಿಯತಾಯು ದೀರ್ಘೋದರ ಮಹೋದರರು
ಈತ ದಮಘೋಷಾತ್ಮಜನು ವಿ
ಖ್ಯಾತ ಶಿಶುಪಾಲನು ಮಹಾಬಲ
ನೀತನಶ್ವತ್ಥಾಮ ಸೌಬಲನೀತ ನೋಡೆಂದ ೫೬

ಭೂತಳದ ರವಿಯಂತೆ ಹೊಳೆಹೊಳೆ
ವಾತ ಕರ್ಣನು ತನುಜರೀತಂ
ಗೀತಗಳು ವೃಷಸೇನನಗ್ಗದ ಚಿತ್ರಸೇನಕರು
ಈತನಾಹನೆ ನೋಡೆನಲು ಭಾ
ವಾತಿಶಯ ಸಂಬಂಧ ಭಾವದೊ
ಳೀತನನು ನೋಡಿದಳು ತಿರುಹಿದಳಬಲೆ ಲೋಚನವ ೫೭

ಉಕ್ಕಿದಾ ಕಿವಿವೇಟ ಕಣ್ ಬೇ
ಟಕ್ಕೆ ತಂದುದು ಕಂಗಳೀಕೆಯ
ಮುಕ್ಕುಳಿಸಿ ಮೈ ಸೋಂಕಿನಲಿ ಲಟಕಟಸಿದುದು ಹೃದಯ
ಸಿಕ್ಕಿತಳಲಿಗೆ ಸೋತು ಸೊಕ್ಕಿನ
ಚುಕ್ಕಿಯೋ ಚಾಪಳವೊ ಸಿದ್ಧಿಯೊ
ಅಕ್ಕಜವೊ ತಾನೆನುತ ಚಿಂತಿಸಿತಾ ನೃಪವ್ರಾತ ೫೮

ಇತ್ತ ನೋಡೌ ತಂಗಿ ಯದು ಭೂ
ಪೋತ್ತಮನನಮರಾರಿ ಕದಳೀ
ಮತ್ತದಂತಿಯ ನಿಖಿಳ ನಿಗಮಾವಳಿ ಶಿರೋಮಣಿಯ
ಉತ್ತರೋತ್ತರ ರಮ್ಯಮೂರ್ತಿಯ
ನುತ್ತಮಾಮಲ ಕೀರ್ತಿಯನು ಮನ
ಹತ್ತುವಡೆ ಹಳಿವಿಲ್ಲ ಕೃಷ್ಣನ ವರಿಸು ನೀನೆಂದ ೫೯

ಮದನನಯ್ಯನು ಮೂಜಗವ ಮಾ
ಡಿದನ ತಾತನು ರೂಪ ವಿಭವವ
ನಿದರೊಳಗೆ ನೀ ನೋಡಿಕೋ ಯಾದವ ಶಿರೋಮಣಿಯ
ಸುದತಿಯರ ಸೇರುವೆಗಳ ನೋ
ಡಿದರೆ ಧಾರುಣಿ ಲಕ್ಷ್ಮಿ ಕೃಷ್ಣನ
ಪದಯುಗವನೋಲೈಸುತಿಹರಬುಜಾಕ್ಷಿ ಕೇಳೆಂದ ೬೦

ಎನಲು ಭಕುತಿಯ ಭಾವರಸದಲಿ
ನೆನೆದು ಹೊಂಪುಳಿವೋಗಿ ರೋಮಾಂ
ಚನದ ಮೈಯುಬ್ಬಿನಲಿ ತನು ಪುಳಕಾಂಬು ಪೂರದಲಿ
ಮನದೊಳಗೆ ವಂದಿಸಿದಳೆನಗೀ
ತನಲಿ ಗುರುಭಾವನೆಯ ಮತಿ ಸಂ
ಜನಿಸಿತೇನೆಂದರಿಯೆನೆಂದಳು ಕಮಲಮುಖಿ ನಗುತ ೬೧

ಹಿರಿಯನೀ ಕೃಷ್ಣಂಗೆ ನೀಲಾಂ
ಬರನು ನೋಡಾದೊಡೆ ಮುರಾರಿಯ
ಹಿರಿಯ ಮಗನನು ಲೋಕ ಮೂರರ ಬಂದಿಕಾರನನು
ಹರನ ಕಣ್ಣಿಗೆ ಬಗೆಯನೆಂಬೀ
ಬಿರುದು ಮನ್ಮಥನೀತನೀತನ
ವರ ತನುಜನನಿರುದ್ಧನಿದು ಯದುರಾಜಕುಲವೆಂದ ೬೨

ಸಾರಣನು ಕಲಿ ಸಾಂಬನೀತನು
ಚಾರು ದೀಪಕನೀತನಮಲಾ
ಕ್ರೂರ ಸತ್ಯಕನೀತ ಸಾತ್ಯಕಿ ಈತ ಕೃತವರ್ಮ
ಸಾರಮೌಂಜಸನೀತನೀತ ವಿ
ದೂರಣಾದಿ ಸಮಸ್ತ ಯಾದವ
ವೀರರಿದಸಂಖ್ಯಾತ ಕೃಷ್ಣ ಕುಮಾರರಿವರೆಂದ ೬೩

ಜಗವನಿಂದ್ರಿಯ ಕರಣ ವಿಷಯಾ
ದಿಗಳನೆಲ್ಲವನೆತ್ತಿ ಮುಖದಲಿ
ತೆಗೆದು ಶ್ರುತಿಶಿರದಮಲ ತತ್ವವನರಸುವಂದದಲಿ
ಬಗೆಯ ಬಯಕೆಯ ಸೊಗಸುಗಳ ದಾ
ಯಿಗನನರಸುತ ಕುಡಿತೆಗಣ್ಣಲಿ
ಮೊಗೆದು ಸೂಸಿದಳಂಬುಜಾನನೆಯಖಿಳ ನೃಪಜನವ ೬೪

ಕೆಲರು ಮಧುರಾಪಾಂಗದಲಿ ಕಂ
ಗಳ ಮರೀಚಿಯ ಬೆಳಗಿನಲಿ ಕೆಲ
ರೆಳೆನಗೆಯ ಮಿಂಚಿನಲಿ ಸಖಿಯರ ಮೇಳವಾತಿನಲಿ
ಲಲನೆ ನೋಡಿದಳೆಂದು ಸೊಗಸಿನ
ಲೊಲಿವ ಸಖಿಯರಿಗೆಂದಳೆಂದೊಳ
ಗೊಳಗೆ ಬೆರೆತರು ಬಯಲು ಮದುವಿನ ಬಾಯ ಸವಿಗಳಲಿ ೬೫

ಗರುವೆಯಿಂಗಿತವರಿದು ದಂಡಿಗೆ
ಮುರಿದೊಡನೆಯ್ತಂದುದೀಕೆಯ
ನೆರವಿ ಕಳುಹುತ ಕಂಗಳಲಿ ಕರಣೇಂದ್ರಿಯಂಗಳಲಿ
ಬರಿಯ ಡಿಂಬದ ಡೊಂಬಿನಲಿ ಕೇ
ಸರಿಯ ಪೀಠವನಿಳಿಯದಿರ್ದರು
ಧರಣಿಪರು ಮುರವೈರಿ ಗಂಗಾಸೂನು ಹೊರತಾಗಿ ೬೬

ಮಡಿಸಿದೆಲೆ ಬೆರಳೊಳಗೆ ಬಾಯೊಳ
ಗಡಸಿದೆಲೆ ಬಾಯೊಳಗೆ ಸಚಿವರ
ನುಡಿಯ ಕೇಳರು ಸುಳಿಯ ಕಾಣರು ಲೋಚನಾಗ್ರದಲಿ
ಕಡುಮುಳಿದ ಕಂದರ್ಪ ಶರವವ
ಘಡಿಸಿ ಕೈಗಳ ನೋಡಿ ನೃಪರೆವೆ
ಮಿಡುಕದಿರ್ದರು ಬೆರಳ ಮೂಗಿನ ಹೊತ್ತ ದುಗುಡದಲಿ ೬೭

ರಾಯನೆಂದನು ಸಕಲಧರಣೀ
ರಾಯರನು ಮನ್ನಿಸದೆ ಮರಳಿದ
ಳಾಯತಾಕ್ಷಿ ಮಹಾಸ್ವಯಂವರದಲಿ ಮಹಾದೇವ
ಜೋಯಿಸರ ಹೋರೆಗರ ಹೇಳಿಕೆ
ಹೋಯಿತೇ ಹೊಳ್ಳಾಗಿ ಪಾಂಡವ
ರಾಯರನು ತೋರಿಸನೆ ಗದುಗಿನ ವೀರನಾರಾಯಣ ೬೮

ಹದಿನಾಲ್ಕನೆಯ ಸಂಧಿ

ಸೂ. ತಮತಮಗೆ ತವಕದಲಿ ಭೂಪೋ
ತ್ತಮರು ಹೋರಿದು ಬಳಲಿ ಜಾತ
ಶ್ರಮರು ಹಿಮ್ಮೆಟ್ಟಿದರು ಗೆಲಿದುದು ಧನು ಮಹಾರಥರ

ಕೇಳು ಜನಮೇಜಯನೃಪತಿ ಪಾಂ
ಚಾಲೆ ಪೊಕ್ಕಳು ಭದ್ರಮಂಟಪ
ಶಾಲೆಯನು ಮರಳಿದುದು ಮನ್ಮಥನೊಡ್ಡು ಸತಿಯೊಡನೆ
ಬಾಲೆಯನು ನಿಜರೂಪ ದರ್ಪದೊ
ಳಾಳಲರಿದಿರೆ ಬಾಹುಬಲದಲಿ
ಸೋಲಿಸುವಡನುವಾಗಿಯೆಂದರು ಹೊಯ್ದು ಡಂಗುರವ ೧

ಇದೆ ಮಹಾಧನು ಬಾಣಪಂಚಕ
ವಿದೆ ನಭೋಗ್ರದ ಯಂತ್ರ ಹೊಳವು
ತ್ತಿದೆ ವಿಭಾಡಿಸಿ ಮೆರೆವನಾವನು ಬಾಹು ವಿಕ್ರಮವ
ಇದುವೆ ಕಬ್ಬಿನ ಬಿಲು ಶರಾವಳಿ
ಯಿದು ಕುಸುಮಮಯ ಯಂತ್ರವಬಲೆಯ
ಹೃದಯವಾತನೆ ರಮಣನಾತನೆ ಕುಸುಮ ಶರನೆಂದ ೨

ಎಂದು ಸಾರಿದು ಭಾರಿ ಧನುವನು
ತಂದು ಧರೆಗಿಳುಹಿದರು ಯಂತ್ರವ
ನಂದವಿಟ್ಟರು ಗಗನದಲಿ ಗವಸಣಿಗೆಗಳನುಗಿದು
ಮುಂದೆ ಕೂರಂಬುಗಳ ಥರಥರ
ದಿಂದ ನಿಲಿಸಿ ಸುಗಂಧದಕ್ಷತೆ
ಯಿಂದ ಪೂಜೆಯ ರಚಿಸಿದರು ವೈದಿಕ ವಿಧಾನದಲಿ ೩

ಮಸಗಿದುದು ಬಹು ವಾದ್ಯರವ ನಿ
ಪ್ಪಸರದಲಿ ನಿಸ್ಸಾಳತತಿ ಗ
ರ್ಜಿಸಿದವಾವರ್ಜಿಸುವವೋಲ್ ಘನ ಯಂತ್ರಭೇದಿಗಳ
ಒಸಗೆಯಾಟವೊ ಬಿಲ್ಲ ಹೊಯ್ಲಿನ
ಹಸುಗೆಯಾಟವೊ ಗರುವರಿಗೆ ಗಂ
ಗಸೆಯ ಮಾಡಿತು ಚಾಪವಿತ್ತಲು ಭೂಪ ಕೇಳೆಂದ ೪

ನೆರವಿಯಲಿ ನಾನಾ ದಿಗಂತದ
ಧರಣಿಪತಿಗಳ ಹಮ್ಮಿಕೆಯಲು
ಬ್ಬರಿಸಿ ಹೊಕ್ಕರು ಬೇರೆ ಬೇರೊಬ್ಬೊಬ್ಬರುರವಣಿಸಿ
ಹರಗಿರಿಗೆ ಹುಲು ರಕ್ಕಸರು ಮು
ತ್ಸರಿಸುವಂತಾಯ್ತೇನನೆಂಬೆನು
ಧರೆಯ ಬಿಡದೀ ಧನು ವಿಭಾಡಿಸಿ ಕೆಡಹಿತವನಿಪರ ೫

ಹಾರ ಹರಿದುದು ಕರ್ಣಪೂರದ
ಚಾರು ಮಣಿಗಳು ಸಡಲಿದುವು ಪದ
ಹೀರ ನೇವುರ ನೆಗ್ಗಿದವು ಕುಗ್ಗಿದವು ನೆನಹುಗಳು
ನಾರಿಯರ ಕೈ ಹೊಯ್ಲು ನಗೆಯ ನಿ
ಹಾರ ಜಡಿದುದು ಮುಸುಕುದಲೆಯ ಮ
ಹೀ ರಮಣರೋಸರಿಸಿ ಸಿಂಹಾಸನವ ಸಾರಿದರು ೬

ಮಿಡುಕದೀ ಧನು ನಮ್ಮ ಝಾಡಿಸಿ
ಕೆಡಹಿತದನಿನ್ನಾರು ಕೊರಳಲಿ
ತೊಡಿಸಿ ತಿರುವನು ಸೆಳೆದು ಬಿಡುವರೊ ಯಂತ್ರದಲಿ ಶರವ
ಕಡುಹಿನಣ್ಣನ ಕಾಂಬೆವೈಸಲೆ
ನುಡಿದು ಮಾಡುವುದೇನೆನುತ ಸಿರಿ
ಮುಡಿಯ ಮುಸುಕಿನ ರಾಯರಿದ್ದರು ಬಯಲ ಬಿಂಕದಲಿ ೭

ಐಸಲೇ ಸೌಭಾಗ್ಯವೆಮಗೆ ಶ
ರಾಸನಾಕರುಷಣದೊಳತಿ ಡೊ
ಳ್ಳಾಸದಲಿ ಡಾವರಿಸಿ ಗೆಲಿದಳು ದ್ರುಪದಸುತೆ ನೃಪರ
ಲೇಸು ತಪ್ಪೇನಿದಕೆನುತ ಭ
ದ್ರಾಸನವನಿಳಿದುಲಿವ ತೊಡರಿನ
ಘೋಷಣೆಯ ಘಳಿಲುಗಳ ಮಗಧ ನೃಪಾಲನೈತಂದ ೮

ಬಿಲ್ಲ ಹೊರಗೈದಿದನು ಚೌಪಟ
ಮಲ್ಲ ನೋಡಿದನೈಸಲೇ ತ
ಪ್ಪಲ್ಲೆನುತ ಮೇಲ್ದಿರುಹಿದನು ಮುಂಗೈಯ ಸರಪಣಿಯ
ಬಿಲ್ಲನೆತ್ತಿದರಿವನನಂಗನೆ
ಯೊಲ್ಲಳೋ ಮೇಣೊಲಿವಳೋ ಮಿಗೆ
ಬಲ್ಲಿದನು ತಾನೀತನೆನುತಿರ್ದುದು ಸಖೀನಿವಹ ೯

ಈತ ಕುಸಿದೆತ್ತಿದಡೆ ಧನು ಮಾ
ರಾತುದಿವನೌಕಿದಡೆ ಕಾರ್ಮುಕ
ವೀತನಾರೆಂದರಿಯದಿವನೌಡೊತ್ತಿ ಪೈ ಬಲಿದ
ಘಾತಿಯಲಿ ಘಲ್ಲಿಸಿದಡಾ ಧನು
ಸೋತುದೆವೆಯಂತರಕೆ ತೊಲಗದು
ಧಾತುಗುಂದಿದನಳ್ಳಿರಿದವಳ್ಳೆಗಳು ಮಾಗಧನ ೧೦

ಬೆಮರನಾರಿಸಿಕೊಂಡು ವಿಗತ
ಶ್ರಮನು ಮೊಳಕಾಲಿಕ್ಕಿ ದಂಡೆಯೊ
ಳಮರಿ ದೇಹವ ಬಲಿದು ವಕ್ಷದೊಳೌಂಕಿ ಗಾಢದಲಿ
ಕುಮತಿಯಲ್ಲಾಡಿದರೆ ಬಿಟ್ಟುದು
ಅಮಮ ಜವೆಮಾತ್ರಕ್ಕೆ ಘನ ವಿ
ಕ್ರಮವನೊಡೆದುದು ಸದೆದುದಾತನ ಗರ್ವವಿಭ್ರಮವ ೧೧

ಕೇಳಿದನು ಕಾಂತಾಕದಂಬದ
ಘೋಳುಗಳು ಘೋಳೆಂಬ ನಗೆಗಳ
ಕಾಳು ಮಾಡಿದನೇಕೆ ಧನು ತಾನೇಕೆ ಸುಡುಯೆನುತ
ಬೇಳುವೆಯಲುಡಿದಂಕದವೊಲು
ಬ್ಬಾಳುತನ ಪೈಸರಿಸೆ ಮುಸುಕಿನ
ಮೌಳಿ ಹಿಮ್ಮೆಟ್ಟಿದನು ಕಡೆಯವಂತಿರುಗಿ ಕಿರುದೊಡೆಗೆ ೧೨

ಕೆರಳಿದನು ದಮಘೋಷನಂದನ
ನರರೆ ದಿಟ್ಟನ ಧನು ವಿಭಾಡಿಸಿ
ತೆರಳಿಚಿತಲಾ ವಿಗಡ ಚಕ್ರಾಯುಧನ ಮಾಗಧನ
ಹರಿಬವೆನ್ನದು ಹೊಳ್ಳುಗಳೆವೆನು
ದುರುಳ ಧನುವನು ನಗುವ ಕನ್ನೆಯ
ತುರುಬು ಕೊಯ್ಯುವೆನೆನುತ ಕಲಿ ಶಿಶುಪಾಲನೈತಂದ ೧೩

ಇವನಲೇ ರಾವಣನು ಮುನ್ನಿನ
ಭವದೊಳಗೆ ತಪ್ಪಿಲ್ಲೆನುತ ಜನ
ನಿವಹ ನಡುಗಿತು ಕೋಮಲಾಂಗಿಯ ಪುಣ್ಯವೆಂತೆನುತ
ಅವನಿಪತಿ ಕೇಳಣೆದನಿವ ಚಾ
ಪವನು ಬೋಳೈಸಿದನು ಬಲುಹೋ
ಶಿವಯೆನುತ ಸೀವರಿಸಿದನು ಡಾವರಿಸಿದನು ಧನುವ ೧೪

ಏನನೆಂಬೆನು ಧನು ಸಘಾಡದ
ಮಾನಭಂಗದ ಮೊದಲ ಮನೆಯೆನೆ
ಮಾನಿನಿಯರಪಹಾಸ್ಯವೀ ಜನರೀ ನೃಪಾಲಕರ
ಹೀನ ನುಡಿಗಳ ಕಂಡು ದೈತ್ಯ ಸ
ಮಾನ ಮನದಲಿ ನೊಂದು ತಿರುಗಿದ
ನೇನನೆಂಬೆನು ಸದೆದುದಾತನ ವರ್ಗವಿಭ್ರಮವ ೧೫

ಕಂಡು ಮಾಗಧ ಕರೆದನೀ ಧನು
ಚಂಡಿಯಿದು ನಮಗಲ್ಲ ನಾವ್ ಮುಂ
ಕೊಂಡು ತಪ್ಪಿತು ನೊಪ್ಪಿತಾದುದು ಭಾರಿಯಗ್ಗಳಿಕೆ
ಭಂಡರೀ ಭೂಮಿಪರು ದ್ರುಪದನ
ಗುಂಡುದೊತ್ತಿರು ನಗೆಯನಾನಲಿ
ಮಂಡೆಗಳಲಿವರೆನುತ ಹಾಯ್ದರು ತಮ್ಮ ಪಟ್ಟಣಕೆ ೧೬

ಗರುವರಲ್ಲಾ ಚೈದ್ಯ ಮಾಗಧ
ರಿರದೆ ತಮ್ಮಯ ಪುರಕೆ ಗಮಿಸಿದ
ರರಸುಗಳ ಮಿಕ್ಕವರ ವಿಧಿಯನು ಕೇಳು ನರನಾಥ
ಧರಧುರದೊಳಭಿಮಾನಹಾನಿಯ
ಹುರುಳಹುದು ಬಿಲು ಹೋರಟೆಗೆ ನಿಲ
ಲರಿದೆನುತ್ತಂಗವಣೆಗುಂದಿತು ನೆರೆದ ನೃಪನಿಕರ ೧೭

ಮರುಳೆ ಪಾಂಚಾಲನ ಕುಮಾರಿಯ
ವರ ಕಟಾಕ್ಷದ ಬೀಸುವಲೆಯಲಿ
ಶರ ಮಹಾಧನುವೆಂಬ ಬಲುದಡಿವಲೆಯನಳವಡಿಸಿ
ಧರಣಿಪಾಲ ಮೃಗಂಗಳನು ಸಲೆ
ಬರಿಸಿ ಸದೆದನು ಹೊಲ್ಲೆಹೇನಂ
ತಿರಲಿ ನೋಡುವೆನೆನುತ ಶಲ್ಯನೃಪಾಲನೈತಂದ ೧೮

ಅಗ್ಗಳೆಯನಾ ಮಗಧ ಮಾತಿನ
ಲಗ್ಗಿದನು ಶಿಶುಪಾಲ ಸೋಲದ
ಸುಗ್ಗಿಯಿಬ್ಬರಿಗಾಯ್ತು ಹಲಬರಿಗಾಯ್ತು ರಣಧೂಳಿ
ತಗ್ಗುವುದೋ ಧನು ಧನುವಿಘಾತಿಗೆ
ಮುಗ್ಗುವನೊ ಮಾದ್ರೇಶನಿವರೊಳ
ಗಗ್ಗಳೆಯನಹನೆಂದು ನೋಡಿದರಂದು ನಾರಿಯರು ೧೯

ಬಂದನೀತನು ಧನುವ ಸಾರಿದು
ನಿಂದು ಸಂವರಿಸಿದನು ಕಾಂತಾ
ವೃಂದವನು ನೋಡಿದನು ಮನದಲಿ ಧಿಕ್ಕು ಧಿಗಿಲೆನುತ
ಸಂದಣೆಯು ನಭಕೊತ್ತಿ ಫಣಿಯಲಿ
ಮಂದರವ ಬಿಗಿವಂತೆ ಭುಜದಲಿ
ಮುಂದುವರಿದವುಚಿದನು ದಂಡೆಯನಿಕ್ಕಿ ಕೋಪದಲಿ ೨೦

ಕೊಳ್ಳದೀ ಧನುವೀತನುಬ್ಬಿನೊ
ಳಳ್ಳೆಗೊಬ್ಬಿನೊಳೌಕಿ ತೊಡರಿನ
ಘಲ್ಲಣೆಯ ಘನಕುಲಿಯೆ ಪಂಟಿಸಿ ನಿಮಿಷ ಮಾತ್ರದಲಿ
ಬಿಲ್ಲು ಬಿಡದವನಿಯಲಿ ಬಿದ್ದನು
ಡೊಳ್ಳು ಮೇಲಾಗಿತ್ತ ಸತಿಯರು
ಘೊಳ್ಳೆನಲು ಸುಡು ಘೋರ ಧನುವನೆನುತ್ತ ಹೊರದೆಗೆದ ೨೧

ಹಿಂಗಿದನು ಮಾದ್ರೇಶನೀ ಧನು
ಭಂಗಿಸಿತು ಮಾನ್ಯರನು ಜಡವಿದು
ಜಂಗಮತ್ವದಲೇನಹುದೊ ರೆಝೋಂಪಿಸಿತಲ್ಲೆ ಜಗವ
ಅಂಗನಾ ಪಾಣಿಗ್ರಹಣ ರಾ
ಯಂಗೆ ತಾನೀ ದುಷ್ಟ ಧನುವನು
ಭಂಗಬಡಿಸದೆ ಬಿಡೆನೆನುತ ಕರ್ಣನೈತಂದ ೨೨

ಈತನರ್ಜುನನಲ್ಲಲೇ ರೂ
ಪಾತಿಶಯವುಳ್ಳಾತ ಯಂತ್ರವ
ನೀತ ಗೆಲಿದರೆ ಪುಣ್ಯವೈಸಲೆ ತಂಗಿಗನುಸಾರಿ
ಈತ ವರನಹುದೆನುತ ಲಲನಾ
ಜಾತವಾತನನೀಕ್ಷಿಸುತ ಸಂ
ಪ್ರೀತಿಯಲಿ ಕೊಂಡಾಡುತಿರ್ದುದು ರಾಯ ಕೇಳೆಂದ ೨೩

ತುಡುಕಿದನು ಚಾಪವನು ಮಹಿಯಿಂ
ಮಿಡುಕದಿರೆ ಮಂಡಳಿಸಿ ಝಾಡಿಸಿ
ಜಡಿದು ಜರೆದೌಂಕಿದನು ದಂಡೆಯನಿಕ್ಕಿ ಕೋಪದಲಿ
ಹೊಡಕರಿಸಿ ಸತ್ವಾತಿಶಯವಿ
ಮ್ಮಡಿಸೆ ಸರ್ಷಪ ಮಾತ್ರ ತಿರುವನು
ತೊಡಿಸಲರಿಯದೆ ಹಿಂಗಿ ಮೌನದೊಳಿರ್ದನಾ ಕರ್ಣ ೨೪

ಇವರು ನಾಲ್ವರಿಗೊಂದೆ ಪಥ ಹಲ
ರವಗಡಿಸಿ ಮುನ್ನಳುಕಿದರು ಬಹು
ಭುವನಪತಿಗಳು ಭಾರಿ ಧನುವಿದೆ ಭಾಮಿನಿಯು ಮುಂದೆ
ಎವಗೆ ತವಗಿದು ವಶವೆ ಬಾವ
ನ್ನವನು ವೇಷ್ಟಿಸಿ ಭುಜಗವಿದೆಯೆಂ
ದವನಿಪರು ಹೊರಗುಂದಿದರು ಭಯಮುಖದ ದುಗುಡದಲಿ ೨೫

ಕ್ಷಿತಿಪ ಕೇಳೈ ವಿಗಡ ಚಾಪ
ವ್ಯತಿಕರಕೆ ದುರ್ಯೋಧನಾದಿ
ಕ್ಷಿತಿಪತಿಗಳಂಜಿದುದ ಕಂಡನು ನಗುತ ಬಲರಾಮ
ಕೃತಕ ಧನುವನು ಮುರಿದು ದ್ರುಪದನ
ಸುತೆಯ ಮುಂದಲೆವಿಡಿದು ತಹೆನು
ದ್ಧತನಲಾ ಪಾಂಚಾಲನೆನುತಿಳಿದನು ವರಾಸನವ ೨೬

ಹಲಧರನ ಮುಸಕವನು ಕಂಡನು
ನಳಿನನಾಭನಿದೇನು ಪೀಠವ
ನಿಳಿದಿರೆಲ್ಲಿಗೆ ಗಮನವಾವುದು ಕಾರ್ಯಗತಿ ನಿಮಗೆ
ತಿಳುಹಿಯೆನೆ ಬೇರೇನು ಯಂತ್ರವ
ಕಳಚಿ ಬಿಸುಟು ಲತಾಂಗಿಯನು ಹಿಡಿ
ದೆಳೆದು ತಹೆನೆನಲೈಸಲೇ ಕೇಳೆಂದನಸುರಾರಿ ೨೭

ಏನಹರು ನಿಮಗಿಂದು ಕುಂತೀ
ಮಾನಿನಿಯರತ್ತೆಯರಲೇ ತ
ತ್ಸೂನುಗಳು ಮೈದುನರು ತತ್ಪತ್ನಿಯರು ತಂಗಿಯರು
ಸಾನುರಾಗವೆ ಮನಕೆ ಸಂಶಯ
ವೇನಿದಕೆ ತಪ್ಪಿಲ್ಲ ಕುಂತೀ
ಸೂನುಗಳು ದ್ರೌಪದಿಗೆ ರಮಣರು ನೋಡಿ ನೀವೆಂದ ೨೮

ಮೂಗಿನಲಿ ಬೆರಳಿಟ್ಟು ಮಕುಟವ
ತೂಗಿದನು ಬಲರಾಮನವನಿಯ
ನೀಗಿ ಹೋದರ ಮಾತು ಪಾಂಡವರೆತ್ತಲಿವಳೆತ್ತ
ಬೇಗುದಿಯೊಳುರಿಯರಮನೆಯೊಳೊಂ
ದಾಗಿ ಬೆಂದರು ಲೋಕವರಿಯೆ ಶ
ಠಾಗಮಿಕ ನಿನಗಂಜುವೆನು ತಾನೆನುತ ಕೈಮುಗಿದ ೨೯

ಕ್ಷಿತಿಯೊಳವರಿಲ್ಲೆಂದು ದ್ರುಪದನ
ಸುತೆಗೆ ಪತಿ ಪರರೆಂದು ಯಂತ್ರ
ಚ್ಯುತಿಗೆ ನೀವುಂಟೆಂದು ತೋರಿತೆ ನಿಮ್ಮ ಚಿತ್ತದಲಿ
ಕ್ಷಿತಿಗೆ ಪಾಂಡವರಲ್ಲದಿಲ್ಲೀ
ಸತಿಗೆ ಪತಿ ಪೆರರಿಲ್ಲ ಕುಂತೀ
ಸುತರನೀಗಳೆ ತೋರುವೆನು ವಸುದೇವನಾಣೆಂದ ೩೦

ಇದು ವಿಚಿತ್ರವಲಾ ಗತಾಸುಗ
ಳುದಿಸಿದರೆ ಲೇಸೈಸಲೇ ದ್ರೌ
ಪದಿಯುನವರನುರಾಗಿಸಲಿ ಭೋಗಿಸಲಿ ಭೂತಳವ
ಇದುವೆ ನಿಶ್ಚಯವಾದರವರ
ಭ್ಯುದಯವೆಮ್ಮಭ್ಯುದಯವೆಂದಾ
ಪದುಮನಾಭನ ಹೊಗಳಿ ಕುಳ್ಳಿರ್ದನು ಸರಾಗದಲಿ ೩

ಈಕೆಯನು ಮೆಚ್ಚಿಸದು ರಾಜಾ
ನೀಕ ಸೌಂದರ್ಯದಲಿ ಚಾಪ
ವ್ಯಾಕರಣ ಪಾಂಡಿತ್ಯವೆಂಬಡೆ ಕಾಣೆ ನಾನೀಗ
ಈಕೆಗಿನ್ನಾರೊಡೆಯರೋ ಕುಂ
ತೀ ಕುಮಾರಕರಿಲ್ಲಲೇ ಸುಡ
ಲೇಕೆ ನೆರಹಿದೆನಿವರನೆನುತಾ ದ್ರುಪದ ಚಿಂತಿಸಿದ ೩೨

ಹರ ಹರಾ ಇನ್ನಾರೊ ತಂಗಿಗೆ
ವರನು ವಾರಿಧಿ ವಲಯದವನೀ
ಶ್ವರರು ನೆರೆದಿದೆ ರೂಪು ವಿಕ್ರಮವೆರಡು ಹೊರತಾಗಿ
ನರಪತಿಗಳಿವರೈಸಲೇಯಿ
ನ್ನರಸಿಗಾವುದು ಹದನೆನುತ ವಿ
ಸ್ತರದ ಗುಜುಗುಜು ಮಸಗಿದುದು ಕಾಂತಾ ಕದಂಬದಲಿ ೩೩

ಅವನಿಪತಿಗಳು ಹೊಳ್ಳುವಾರಿದ
ರಿವರೊಳಿಲ್ಲಲೆ ದಕ್ಷಿಣೆಯ ಹಾ
ರುವ ಮಹಾಜನವಿದೆ ಸಮುದ್ರಕೆ ಪಡಿ ಸಮುದ್ರವೆನೆ
ಇವರೊಳಗೆ ಮುಂಗೈಯ ಬಲುಹು
ಳ್ಳವರು ನೆಗಹಲಿ ಧನುವನೀ ಯಂ
ತ್ರವನು ಜಯಿಸಲಿಯೆಂದು ಧೃಷ್ಟದ್ಯುಮ್ನ ಸಾರಿಸಿದ ೩೪

ಹದಿನೈದನೆಯ ಸಂಧಿ

ಸೂ. ರಾಯಸಭೆ ನಗಲೈದಿ ಯಂತ್ರದ
ದಾಯವನು ನೆರೆ ಗೆಲಿದು ನಿರ್ಜರ
ರಾಯನಂದನ ಕಾದಿ ಗೆಲಿದನು ಸಕಲ ರಿಪು ನೃಪರ

ಕೇಳು ಜನಮೇಜಯ ಧರಿತ್ರೀ
ಪಾಲ ಪಾಂಚಾಲಿಯ ಮನೋರಥ
ಶಾಲೆಯಲಿ ಸಾರಿದರಲೈ ಸಭೆಯಲಿ ಮಹೀಸುರರ
ಏಳಿ ಭುಜಬಲವುಳ್ಳವರು ವಿ
ಪ್ರಾಳಿಯಲಿ ಬಿಲುವಿಡಿದು ಯಂತ್ರದ
ಕೋಲುಗಳ ಕೇವಣಿಪುದೆಂದರು ಹೊಯ್ದು ಡಂಗುರವ ೧

ಬೆರಸುವರು ಪಾರ್ಥಿವರು ಪಾರ್ಥಿವ
ವರರೊಡನೆ ತದಲಾಭ ಪಕ್ಷಾಂ
ತರಕೆ ಪಾರ್ಥಿವ ಸುತೆಯನೀವುದು ವಿಪ್ರಜಾತಿಯಲಿ
ಪುರುಷರನುಲೋಮದಲಿ ಕನ್ಯಾ
ವರಣವಹುದು ವಿಲೋಮದಲಿ ವಿ
ಸ್ತರಿಸಲೇಕಿದ ನೀವು ಬಲ್ಲಿರಿ ಶಾಸ್ತ್ರನಿರ್ಣಯವ ೨

ಎಂದು ಸಾರಿದ ದನಿಯನಾ ದ್ವಿಜ
ವೃಂದವಾಲಿಸಿ ನಿಮಗಿದೇಕರ
ವಿಂದವದನೆಯ ತೊಡಕು ತೆಗೆ ನಾವಾರು ಧನುವಾರು
ಬಂದ ದಕ್ಷಿಣೆ ಮೃಷ್ಟಭೋಜನ
ದಿಂದ ತುಷ್ಟರು ನಾವು ನಮಗಿದ
ರಿಂದ ಬಹ ದುಷ್ಕೀರ್ತಿ ಬರಲೆಂದುದು ಬುಧವ್ರಾತ ೩

ವಚನ ಶೂರರು ನಾವು ಪಾರ್ಥಿವ
ನಿಚಯವೇ ಭುಜ ಶೂರರನಿಬರ
ನಚಲ ಧನು ಭಂಗಿಸಿತು ನಮಗೀ ವಿದ್ಯೆ ವೈದಿಕವೆ
ಉಚಿತವಲ್ಲಿದು ನಮ್ಮ ಸಾಹಸ
ರಚನೆಯನು ನೋಡುವರೆ ಪಂಡಿತ
ನಿಚಯವಿದಿರಲಿ ನಿಲಲಿ ತೋರುವೆವಲ್ಲಿ ವಿಸ್ಮಯವ ೪

ಸಾಂಗ ವೇದ ಪದಕ್ರಮದ ಸ
ರ್ವಾಂಗ ವಿಷಯದಲಖಿಳ ಪೌರಾ
ಣಂಗಳಲಿ ಮೀಮಾಂಸೆಯೊಳ್ ಸ್ಮೃತಿ ತರ್ಕಶಾಸ್ತ್ರದಲಿ
ಭಂಗಿಸುವೆವೀ ದ್ರೌಪದಿಯನಾ
ವಂಗದಲಿ ವಾತ್ಸ್ಯಾಯನಾದಿಯು
ಪಾಂಗ ವಿದ್ಯದಲೆಮ್ಮ ನೋಡೆಂದುದು ಬುಧಸ್ತೋಮ ೫

ಭರತದಲಿ ವೈದ್ಯದಲಿ ಕಾವ್ಯ ಸು
ವಿರಚಿತಾಲಂಕಾರದಲಿ ಗಜ
ತುರಗ ಲಕ್ಷಣದಲಿ ಸಮಾಹಿತ ಮಂತ್ರತಂತ್ರದಲಿ
ಸರಸ ಕವಿತಾರಚನೆಯಲಿ ವಿ
ಸ್ತರದುಪನ್ಯಾಸದಲಿ ಭೂಪತಿ
ಕರೆಸಿ ನೋಡಲಿ ನಮ್ಮನೆಂದರು ದ್ವಿಜರು ತಮತಮಗೆ ೬

ಅಲ್ಲದಿರ್ದರೆ ಶೋಧಿಸಿದ ತನಿ
ಬೆಲ್ಲವಿಕ್ಕಿದ ಹೂರಿಗೆಯ ಮೆದೆ
ಯಲ್ಲಿ ಪರಡಿಯ ಶಾವಿಗೆಯ ಪರಿಪರಿಯ ಪಾಯಸದ
ಪುಲ್ಲಿಗೆಯ ತತ್ಸವಿಯ ಮಂಡಿಗೆ
ಯಲ್ಲಿ ನವಘೃತ ಸೂಪದಂಶಕ
ದಲ್ಲಿ ನೋಡಲಿ ನಮ್ಮನೆಂದುದು ಧೂರ್ತ ವಟುನಿಕರ ೭

ರಸದ ಹೊರಲೇಪದಲಿ ಹುದುಗಿದ
ಮಿಸುನಿಯಂತಿರೆ ಜೀವಭಾವ
ಪ್ರಸರದೊಳಗವಲಂಬಿಸಿದ ಪರಮಾತ್ಮನಂದದಲಿ
ಎಸೆವ ವಿಪ್ರಾಕಾರದಲಿ ರಂ
ಜಿಸುವ ಭೂಪತಿ ತತ್ಸಭಾಸ
ದ್ವಿಸರ ಮಧ್ಯದೊಳಿರ್ದು ಕೇಳಿದನೀ ಮಹಾಧ್ವನಿಯ ೮

ನೋಡಿದನು ತಮ್ಮನನು ಸನ್ನೆಯ
ಮಾಡಿದಡೆ ಕೈಕೊಂಡನವನಿಪ
ಗೂಡಿ ಕುಂತಿಗೆ ಭೀಮಸೇನಂಗೆರಗಿ ಮನದೊಳಗೆ
ಕೂಡೆ ಕುಳ್ಳಿರ್ದಖಿಳ ವಿಪ್ರರ
ನೋಡಿ ಮೆಲ್ಲನೆ ಧೋತ್ರ ದರ್ಭೆಯ
ಗೂಡ ಸಂವರಿಸುತ್ತ ಸಭೆಯಿಂದೆದ್ದನಾ ಪಾರ್ಥ ೯

ಏನು ಸಿದ್ಧಿಯುಪಾಧ್ಯರೆದ್ದಿರಿ
ದೇನು ಧನುವಿಂಗಲ್ಲಲೇ ತಾ
ನೇನು ಮನದಂಘವಣೆ ಬಯಸಿದಿರೇ ನಿತಂಬಿನಿಯ
ವೈನತೇಯನ ವಿಗಡಿಸಿದ ವಿಷ
ವೇನು ಸದರವೊ ಹಾವಡಿಗರಿಗಿ
ದೇನು ನಿಮ್ಮುತ್ಸಾಹವೆಂದುದು ಧೂರ್ತ ವಟುನಿಕರ ೧೦

ಮದುವೆ ಬೇಕೇ ಶ್ರೋತ್ರಿಯ ಸ್ತೋ
ಮದಲಿ ಕನ್ಯಾರ್ಥಿಗಳು ನಾವೆಂ
ಬುದು ನಿಜಾನ್ವಯ ವಿದ್ಯೆಯಲಿ ಕೊಡುವುದು ಪರೀಕ್ಷೆಗಳ
ಮದುವೆಯಹುದಿದು ಸೌಖ್ಯ ಪುಣ್ಯ
ಪ್ರದವು ಭೂದೇವರಿಗೆ ನೀ ನೆನೆ
ದುದು ಭಗೀರಥಯತ್ನವೆಂದುದು ಭೂಸುರವ್ರಾತ ೧೧

ನೀವು ಸ್ವೈರಿಸಿ ನಿಮ್ಮ ಕಾರು
ಣ್ಯಾವಲೋಕನವುಂಟಲೇ ಸ
ದ್ಭಾವದಲಿ ನೀವ್ ರಚಿಸಿದಾಶೀರ್ವಾದ ಶಕ್ತಿಯಲಿ
ನಾವು ವಿಜಯರು ಚಾಪ ಯಂತ್ರವಿ
ದಾವ ಘನವೆಂದರ್ಜುನನ ಸಂ
ಭಾವನೋಕ್ತಿಗೆ ನಿಲ್ಲದವರೊದರಿದರು ತಮತಮಗೆ ೧೨

ಕ್ರಮಿತರವಧರಿಸಿದಿರೆ ಶುದ್ಧ
ಭ್ರಮಿತ ಮೂಲನ ಹಿರಿಯ ವಿಷ್ಣು
ಕ್ರಮಿತರೇ ದೀಕ್ಷಿತರೆ ಧನುವಿಗೆ ಯತ್ನ ಮಾಡಿದಿರೆ
ಕ್ರಮವೆ ತಾನಿದು ಕ್ಷತ್ರಿಯರನಾ
ಕ್ರಮಿಸುವುದು ಸದ್ಧರ್ಮವೇ ಉ
ಧ್ಭ್ರಮಿತನಿವ ನೆರೆ ಹಳಿವ ತಹನೀ ಶ್ರೋತ್ರಿಯರ ಸಭೆಗೆ ೧೩

ಕೆಲರು ಹೋಗದಿರೆಂದು ಜರೆದರು
ಕೆಲರು ತಾನೇ ಬಲ್ಲನೆಂದರು
ಕೆಲರು ನುಡಿದರು ವಿಪ್ರಸಭೆಗಪಹಾಸ್ಯವಹುದೆಂದು
ಕೆಲರು ತಪ್ಪೇನೆಂದು ಕಳೆದರು
ಕೆಲರು ಭದ್ರಾಕಾರನೀತಂ
ಗಳುಕುವುದು ಧನು ಭಾಗ್ಯಮುಖನೆಂದುದು ಬುಧಸ್ತೋಮ ೧೪

ತೊಟ್ಟ ಹೊಸ ಯಜ್ಞೋಪವೀತದ
ಮಟ್ಟಿ ನೊಸಲಲಿ ಕುಶೆಯ ಕರಡಿಗೆ
ಕಟ್ಟಿಯಿರುಕಿದ ಕಕ್ಷೆ ಬೆರಳಲಿ ಮುರಿದ ದರ್ಭೆಗಳ
ಉಟ್ಟ ಬಾಸರ ಬಳಲುಗಚ್ಚೆಯ
ನಟ್ಟಹಾಸದ ಜನದ ನಗೆಗಳ
ನಟ್ಟವಿಗನೋಸರಿಸಿ ಸಭೆಯಲಿ ಮೆಲ್ಲನೈತಂದ ೧೫

ತಿರುಗಿ ಕಂಡರು ಸಕಲ ಪೃಥ್ವೀ
ಶ್ವರರು ಗಹಗಹಿಸಿದರಿದೇನರೆ
ಮರುಳೊ ಜಡನೋ ವಿಪ್ರವೇಷಚ್ಛನ್ನ ಸುರಪತಿಯೊ
ಮರುಳುಗಳು ತಾವಕಟ ಮದನನ
ಸರಳ ಮರು ಮೊನೆಗಾವನಂತಃ
ಕರಣ ನೆರೆ ಕಳವಳಿಸದೆಂದರು ನೆರೆದ ಸಭೆಯೊಳಗೆ ೧೬

ಧನು ತನಗೆ ನೆಗಹಲ್ಕೆ ಕೃಷ್ಣಾ
ಜಿನವೊ ಸಾಲಗ್ರಾಮದೇವರೊ
ವಿನುತ ತುಳಸಿಯೊ ಕುಶವೊ ದರ್ಭೆಯೊ ಸಮಿಧೆಗಳ ಹೊರೆಯೊ
ನೆನೆದ ತಿಲವೋ ಮೇಣಿದೌಪಾ
ಸನದ ಕೊಳವಿಯೊ ಬಣಗು ವಿಪ್ರನ
ನೆನಹ ನೋಡಿರೆ ಘನವಲಾ ದ್ರೌಪದಿಯ ಸೌಭಾಗ್ಯ ೧೭

ಅಂಗವಿದು ಗಜ ತುರಗ ಶಸ್ತ್ರಾ
ಸ್ತ್ರಂಗಳರಿತವು ನಮಗೆ ವಿಪ್ರಂ
ಗಂಗವೇದ ಪುರಾಣ ತರ್ಕ ಸ್ಮೃತಿ ಸುವಿದ್ಯೆಗಳು
ಅಂಗವಂಗಿಗಸಾಧ್ಯವಾದುದ
ನಂಗಿಗೊಡಬಡುವುದೆ ದ್ವಿಜಾತಿಗೆ
ಸಂಗತಾನುಷ್ಠಾನಪರವೆಂದುದು ನೃಪಸ್ತೋಮ ೧೮

ಲಹರಿ ಮಸಗಿದುದತ್ತ ಕಾಂತಾ
ಬಹಳ ಪಾರಾವಾರ ಹುಬ್ಬಿನ
ವಿಹೃತಿಗಳ ತೆರೆಮಾಲೆಗಳ ಬೆಳುನಗೆಯ ಬುದಬುದದ
ಗಹಗಹಿಕೆ ಮಿಗೆ ಅಟ್ಟಹಾಸದ
ರಹಣಿಗಳ ರಭಸದ ವಿಡಂಬದ
ವಿಹರಣದಚಲ ದೃಷ್ಟಿಗಳ ಮರಿಮೀನ ಹೊಳಹುಗಳ ೧೯

ಇತ್ತ ನೋಡೌ ತಾಯೆ ಹಾರುವ
ರತ್ತ ಗಡ್ಡದುಪಾಧ್ಯರನು ತಾ
ವೆತ್ತುವರು ಗಡ ಧನುವನೆಸುವರು ಗಡ ತಿಮಿಂಗಿಲನ
ಹೊತ್ತುಗಳೆವರೆ ಲೇಸು ಬಳಿಕಿ
ನ್ನುತ್ತಮರಲಾ ವಿಪ್ರರೆನೆ ತಲೆ
ಗುತ್ತಿ ನಾಚಿದಳುಂಗುಟದೊಳೌಕುತ ಮಹೀತಳವ ೨೦

ಎಲವೊ ಮಟ್ಟಿಯ ಮದನ ದರ್ಭೆಯ
ತಿಲದ ಮನ್ಮಥ ವಿಮಲ ಧೋತ್ರದ
ತಳಿರುಗಾಸೆಯ ಕಾಮ ಕೃಷ್ಣಾಜಿನದ ಕಂದರ್ಪ
ನಳಿನಮುಖಿಯನು ವರಿಸು ಬಾ ನಿನ
ಗಳವಡ ವನೆಲೆಯಕ್ಕ ಕೇಳೌ
ತಲೆವಿಡಿವವಾವ್ನೋಡುಯೆಂದರು ನಗುತ ಚಪಲೆಯರು ೨೧

ಅದೆ ಹಲಾಯುಧ ನೋಡು ವಿಪ್ರೌ
ಘದಲಿ ಪಾರ್ಥನ ಬರವು ಮೇಘದ
ಹೊದರುಗಳ ಹರಿದಶ್ವನಂತಿರೆ ವಿಪ್ರವೇಷದಲಿ
ವಿದಿತವೇ ವಸುದೇವನಾಣೆಂ
ದುದಕೆ ತಪ್ಪದಲೈ ಸಭಾ ಮ
ಧ್ಯದಲಿ ಬರುತಿರ್ಪಾತನರ್ಜುನನೆಂದನಸುರಾರಿ ೨೨

ಜನಪನೋ ಭೀಮಾದಿಗಳೊ ತ
ಜ್ಜನನಿಯೋ ತಾವೆಲ್ಲ ಭೂಸುರ
ಜನದ ಸಾಮಿಪ್ಯದಲಿ ಸಭೆಯೊಳಗಿರ್ದರೆನೆ ಕೇಳ್ದು
ನಿನಗಿದೆಂತವರರಿತವರಗಿನ
ಮನೆಗೆ ತಪ್ಪಿದರೆಂತು ಶಿವ ನೀ
ನೆನಿತು ಮಾಯಾಸಿದ್ಧನೆಂದನು ನಗುತ ಬಲರಾಮ ೨೩

ಅವನಿಪತಿ ಕೇಳಿತ್ತಲೀ ಪಾ
ರ್ಥಿವರ ಪರಿಹಾಸವನು ಕಾಂತಾ
ನಿವಹದಲಿ ನಿಬ್ಬರದ ನುಡಿಗಳನಾ ಮಹೀಸುರರ
ವಿವಿಧ ಕಟು ಮಧುರೋಕ್ತಿ ವಿನ್ಯಾ
ಸವನು ಕೇಳುತ ಮುಗುಳುನಗೆಯಲಿ
ನವ ಮದ ದ್ವಿಪ ಗತಿಯು ಗರುವಾಯಿಯಲಿ ನಡೆತಂದ ೨೪

ಇವನ ಗತಿಮುಖಚೇಷ್ಟೆ ಭಾವೋ
ತ್ಸವ ವಿಲಾಸವುಪೇಕ್ಷೆ ಭರವಂ
ಘವಣೆ ಗರುವಿಕೆ ಗಮಕ ಭಾವವಭೀತಿ ಭುಲ್ಲವಣೆ
ಇವನ ವಿಮಲ ಕ್ಷತ್ರವಿಕ್ರಮ
ವಿವನ ಕೊಂಡಯುತನವಿವೇ ಸಾ
ಕಿವನು ಘಾಟದ ವೀರನೆಂದರು ವೀರರರ್ಜುನನ ೨೫

ಬರುತ ಭೀಷ್ಮ ದ್ರೋಣ ಕೃಪರಿಂ
ಗೆರಗಿದನು ಮನದೊಳಗೆ ಯಾದವ
ರರಸ ಹಂತಿಯ ಹರಿಯನಭಿವಂದಿಸಿದನಕ್ಷಿಯಲಿ
ಸುರಪತಿಗೆ ಗುಹ ಗಣಪ ದಿಕ್ಪಾ
ಲರಿಗೆ ರುದ್ರಾದಿತ್ಯ ವಸು ಮು
ಖ್ಯರಿಗೆ ಮಣಿದನು ಬಂದನಗ್ಗದ ಚಾಪವಿದ್ದೆಡೆಗೆ ೨೬

ಮೊದಲಲಂಬುಜಭವನನಾ ಮಂ
ಧ್ಯದಲಿ ಮಧುಸೂದನನನಾ ಬಿಲು
ದುದಿಯುಲಾಹ್ವಾನಿಸಿದನಗ್ಗದ ನೀಲಲೋಹಿತನ
ಇದು ಮಹಾಭೂಮಿಪರ ಬಿಂಕವ
ನೊದೆದ ಧನುವೇ ಪೂತುರೆನುತೆ
ತ್ತಿದನ ಬಾಗೊತ್ತಿದನು ಕೊರಳಿಗೆ ತೊಡಿಸಿದನು ತಿರುವ ೨೭

ಹೊಯ್ದು ತಿರುವನು ಸೆಳೆದು ಕಿವಿವರೆ
ಗೊಯ್ದು ನಿದು ಹದವಿಲ್ಲಲಾ ಬಿಲು
ಹೊಯ್ದುದಕಟಾ ಬರಿದೆ ಹೆದರಿತು ಮಾಗಧಾದಿಗಳು
ಕೈದೆಗೆದರಿದರೊಳಗೆ ಹೆಸರೆನ
ಗೈದಬೇಕೆಂದೈಸಲೇಯೆನು
ತೈದು ಬಾಣವ ಕೊಂಡು ಯಂತ್ರದ ಹೊಳಹನೀಕ್ಷಿಸಿದ ೨೮

ತೂಗಿ ಕಿವಿವರೆಗುಗಿದು ಯಂತ್ರವ
ತಾಗಿಸಿದನಂಬಿನಲಿ ಪಾರ್ಥನ
ಲಾಗು ವೇಗವನಾರು ಬಲ್ಲರು ಯಂತ್ರಭೇದದಲಿ
ಜಾಗು ಧಣು ಧಣು ಪೂತು ಕಾರ್ಮುಕ
ಯೋಗಸಿದ್ಧನೆ ಮಝುರೆ ಕೋದಂ
ಡಾಗಮ ತ್ರಿಪುರಾರಿಯೆಂದುದು ವಂದಿ ಸಂದೋಹ ೨೯

ಆಯೆನುತ ಬೊಬ್ಬಿರಿದು ವಿಪ್ರ ನಿ
ಕಾಯ ಕುಣಿದುದು ಕಮಲಮುಖಿ ನಿ
ರ್ದಾಯದಲಿ ಸೇರಿದಳು ಹಾರುವಗೆನುತ ಹರುಷದಲಿ
ಆ ಯುವತಿಜನ ಜಲಧಿ ಮಸಗಿತು
ಬಾಯ ಮೌನದ ಬೆರಳ ಮೂಗಿನ
ರಾಯರಿದ್ದರು ಬಿಗಿದ ಬೆರಗಿನ ಹೊತ್ತ ದುಗುಡದಲಿ ೩೦

ಮೊಳಗಿದವು ನಿಸ್ಸಾಳ ತತಿ ಹೆ
ಕ್ಕಳದ ಪರ್ಚಿನೊಳಲ್ಲಿ ದಿವಿಜಾ
ವಳಿಯ ದುಂದುಭಿ ರವದಲುಬ್ಬಿದ ಸಾಧುವಾದಗಳ
ಕಳಕಳದ ಕೊಲ್ಲಣಿಗೆಯಲಿ ಪೂ
ವಳೆಯ ಪೂರದ ಹರಹಿನಲಿ ಜನ
ಮುಳುಗಿತದ್ಭುತ ರಭಸವಳ್ಳಿರಿದುದು ಜಗತ್ರಯವ ೩೧

ಕಿತ್ತ ಸುರಗಿಯ ವೀರ ಭಟರರು
ವತ್ತು ಸಾವಿರವೈದಿ ಪಾರ್ಥನ
ಸುತ್ತು ಮುತ್ತಿದರಂಗ ರಕ್ಷಣೆಗರಸನಾಜ್ಞೆಯಲಿ
ಇತ್ತ ಮಹಿಳಾಜನದ ಮೌಳಿಯ
ಮುತ್ತು ಕುಸುಮಾಯುಧನ ಘಟ್ಟಿನ
ಮತ್ತಗಜವೈತಂದಳಲ್ಲಿಗೆ ದ್ರೌಪದಾದೇವಿ ೩೨

ತೊಲತೊಲಗು ಮನ್ಮಥನ ಹೊಗರಿ
ಟ್ಟಲಗು ಬರುತಿದೆ ಸಾರು ಸಾರೆಂ
ದುಲಿದು ಕಂಚುಕಿ ನಿಕರ ಹೊಯ್ದುದು ಮುಂದೆ ಸಂದಣಿಯ
ನಳಿನಮುಖಿ ದಂಡಿಗೆಯೊಳೈತಂ
ದಿಳಿದಳೀತನ ಹೊರೆಯೊಳಾಗಳೆ
ಕಳಕಳದಲೊಳತೋಟಿ ಮಸಗಿತು ಹರುಷ ಲಜ್ಜೆಯಲಿ ೩೩

ಲಲಿತ ಮಧುರಾಪಾಂಗದಲಿ ಮು
ಕ್ಕುಳಿಸಿ ತಣಿಯವು ಕಂಗಳುಬ್ಬಿದ
ಪುಳಕ ಜಲದಲಿ ಮುಳುಗಿ ಮೂಡಿತು ಮೈ ನಿತಂಬಿನಿಯ
ತಳಿತ ಲಜ್ಜಾಭರಕೆ ಕುಸಿದ
ವ್ವಳಿಸಿತಂತಃಕರಣವಾಂಗಿಕ
ಲುಳಿತ ಸಾತ್ವಿಕ ಭಾವವವಗಡಿಸಿತ್ತು ಮಾನಿನಿಯ ೩೪

ಧರಣಿಪತಿ ಕೇಳ್ ಬಹಳ ಲಜ್ಜಾ
ಭರದ ಭಯದಲಿ ಬೆಮರಿಡುತ ಕುಚ
ಭರದಿ ಮೇಲುದು ಜಾರೆ ಜೋಡಿಸಿ ನಿಮಿರಿ ನಡನಡುಗಿ
ತರುಣಿ ನಿಜತನು ಪರಿಮಳದಲುರೆ
ಹೊರೆದ ಹೂವಿನ ದಂಡೆಯನು ನಿಜ
ವರನ ಕೊರಳಲಿ ಹಾಯ್ಕಿದಳು ಜಯವೆನೆ ಸುರಸ್ತೋಮ ೩೫

ಕೊರಳ ಹೂವಿನ ದಂಡೆಯಲಿ ನಿಜ
ಕರದ ಭಾರಿಯ ಧನುವಿನಲಿ ತನು
ಪರಿಮಳದ ನಿಟ್ಟೆಸಳುಗಂಗಳ ಕೆಲದ ಯುವತಿಯಲಿ
ವರನ ಪರಿ ಹೊಸತಾಯ್ತು ಹೊತ್ತನು
ಹರನ ಹಗೆ ಹಾರುವಿಕೆಯನು ನ
ಮ್ಮರಸಿ ನೆರೆ ಹಾರುವತಿಯೆಂದರು ನಗುತ ಚಪಲೆಯರು ೩೬

ಜನಪ ಕೇಳೈ ಯುವತಿಯೊಡನ
ರ್ಜುನನ ತಂದರು ರಾಜಮಂದಿರ
ಕನಿಮಿಷಾವಳಿ ಹರಿದುದಭ್ರದೊಳಮರಪತಿ ಸಹಿತ
ಮನದಸೂಯದ ಮುಖದ ದುಗುಡದ
ವಿನತ ಮಕುಟದ ಕೈಯ ಗಲ್ಲದ
ಕನಲಿಕೆಯ ಕೊನರುಗಳ ಕೌರವರಾಯ ಖತಿಗೊಂಡ ೩೭

ಏನು ಹದ ಪಾಂಚಾಲ ಮಾಡಿದ
ಮಾನಭಂಗವ ಕಂಡಿರೇ ಕಾ
ನೀನ ಶಕುನಿ ಜಯದ್ರಥಾಶ್ವತ್ಥಾಮ ಮೊದಲಾದ
ಮಾನನಿಧಿಗಳು ಕಂಡಿರೇ ಮದ
ದಾನೆಗಳು ನೀವ್ಕಂಡಿರೇ ಹದ
ನೇನೆನುತ ಕುರುರಾಯ ಮೂದಲಿಸಿದನು ತನ್ನವರ ೩೮

ಹಳೆಯ ಹುಲು ಧನುವಿದನು ಹಾರುವ
ಸೆಳೆದ ಗಡ ಕೌಳಿಕದ ಯಂತ್ರವ
ಗೆಲಿದ ಗಡ ಗರುವಾಯಿಗೆಡಿಸಿದ ಗಡ ಮಹೀಶ್ವರರ
ನಳಿನಮುಖಿ ಹಾಯ್ಕಿದಳು ಗಡ ತಿರು
ಕುಳಿಯ ಕೊರಳಲಿ ದಂಡೆಯನು ನೀ
ವೊಲಿದು ಮದುವೆಯ ಮಾಡಿಯೆಂದನು ಬೈದು ಭೂಮಿಪರ ೩೯

ಭಂಡರೋ ನೀವ್ ನೆರೆದ ಧರಣೀ
ಮಂಡಲೇಶ್ವರರಕಟ ನಿಮ್ಮಯ
ಹೆಂಡಿರನು ಬಳುವಳಿಯ ಕೊಡಿ ಹಾರುವನ ಹೆಂಡತಿಗೆ
ಗಂಡುಗಲಿಗಳ ನಿಮ್ಮನನಿಬರ
ಕಂಡುಪೇಕ್ಷಿಸಿ ಯಾಚಕನ ಕೈ
ಕೊಂಡಳಿದಕೇನುಂಟು ಮನದಲಿ ವಾಸಿ ನಿಮಗೆಂದ ೪೦

ವಾಸಿಗಳನರಸುವಡೆ ದ್ರುಪದನ
ಮೀಸಲಡಗನು ಹದ್ದು ಕಾಗೆಗೆ
ಸೂಸಿ ವಿಪ್ರನ ಬಡಿದು ಬಿಡುವುದು ಮತ್ತೆ ತಿರಿದುಣಲಿ
ಆ ಸರೋಜಾನನೆಯ ನಮ್ಮ ವಿ
ಲಾಸಿನಿಯ ವೀಧಿಯಲಿ ಕೂಡುವ
ದೈಸಲೇಯೆನುತೊಡನೊಡನೆ ಗರ್ಜಿಸಿತು ನೃಪನಿಕರ ೪೧

ಏಳಿ ಹತ್ತಲಿ ಲಗ್ಗೆ ಪದಹತ
ಧೂಳಿಯಲಿ ಹಿರಿಯಗಳಿನಗಲವ
ಹೂಳಿ ಕಳೆಯಲಿ ಹರಿದು ಹತ್ತಲಿ ತೆನೆಯ ಸರಿಸದಲಿ
ಕೋಲು ಗುಂಡಿನ ಹತಿಗೆ ಹುರಿಯೊಡೆ
ದಾಳ ಹೊಯ್ ಹೊಯ್ಯೆನುತ ಸಕಲ ನೃ
ಪಾಳಿ ಗರ್ಜಿಸಿ ಮುತ್ತಿದುದು ಪಾಂಚಾಲ ಪಟ್ಟಣವ ೪೨

ಕೂಡೆ ಗಜಬಜವಾಯ್ತು ಹರಿದುದು
ನಾಡಿಗಾವಳಿ ವಿಪ್ರಸಭೆ ತೆಗೆ
ದೋಡಿತೀ ಪಾಂಡವರು ಬಂದು ಕುಲಾಲ ಭವನದಲಿ
ನೋಡುತಿರ್ದರು ಲಗ್ಗೆಯಬ್ಬರ
ವೀಡಿರಿದುದು ದಿಗಂತವನು ಕೈ
ಮಾಡಿ ಕೋಟೆಯನಿಳಿದು ಬೆರಸಿದರಾಳುವೇರಿಯಲಿ ೪೩

ಹಲ್ಲಣಿಸಿದರು ಹೊಗುವ ಚೂಣಿಯ
ಚೆಲ್ಲ ಬಡಿದರು ಸರಿಸಕಡರುವ
ಬಿಲ್ಲ ಬಿರುದರ ಮೆಟ್ಟಿ ತಿವಿದರು ಸಾಲ ಸಬಳಿಗರು
ಝಲ್ಲರಿಯ ಝಡಿಗಳ ವಾದ್ಯದ
ಘುಲ್ಲಣೆಯ ದಳ ನೆರೆದುದಲ್ಲಿಯ
ದಲ್ಲಿ ಮುತ್ತಿಗೆ ತೆಗೆಸಿದರು ಪಾಂಚಾಲ ನಾಯಕರು ೪೪

ಚೂಣಿ ಮುರಿದೈತರಲು ಬಹಳ
ಕ್ಷೋಣಿಯಲಿ ಕುರುಪತಿಯ ಥಟ್ಟಿನ
ಹೂಣಿಗರು ಹುರಿಗೊಂಡು ಕವಿದರು ಕರ್ಣ ಮೊದಲಾಗಿ
ಸಾಣೆಯಲಗಿನ ಸರಿಗೆ ಪರಬಲ
ವಾಣೆಯಿಟ್ಟವೊಲಡಿ ಮಿಡುಕದ
ಕ್ಷೀಣ ಬಲವೋಸರಿಸಿ ತೆಗೆದುದು ದ್ರುಪದ ಪರಿವಾರ ೪೫

ಮೊದಲ ಲಗ್ಗೆಯ ಧೂಳಿಯೇ ದ್ರೌ
ಪದಿಯ ಬೈತಲೆಗಮಲ ಸಿಂಧೂ
ರದ ಸುವಿಸ್ತರವಾಗದಿರ್ದಡೆ ರಾಯನಾಣೆನುತ
ಮದಮುಖರು ಮುಂಕೊಂಡು ದುರ್ಗವ
ಬೆದರಿಸಿತು ಬೇರೇನು ದ್ರುಪದನ
ಸದನ ಸೀಮೆಯ ಬೆರಸಿ ಹೊಯ್ದರು ರಾಜಬೀದಿಯಲಿ ೪೬

ಏಳು ಮನ್ನೆಯ ಗಂಡನಾಗು ನೃ
ಪಾಲ ಮದುವೆಯ ಮನೆಗೆ ರಾಯರ
ಧಾಳಿ ಬಿದ್ದಿನವಾಯ್ತು ನಡೆ ಸಂತೈಸು ಬೀಯಗರ
ಏಳೆನಲು ಕಳಕಳವನರ್ಜುನ
ಕೇಳಿದನು ಹೊದೆಯಂಬುಗಳ ತರ
ಹೇಳೆನುತ ಕವಿದೆಚ್ಚು ಮುರಿದನು ಭಟರ ಮುಂಗುಡಿಯ ೪೭

ಅದು ಬಳಿಕ ಕಲ್ಪಾಂತ ಮೇಘದ
ಮೊದಲ ಮಳೆಯೆನೆ ಕವಿದುದಂಬಿನ
ಹೊದರು ಹುದುಗಿತು ರಾಯದಳರೌಕುಳದ ರಕ್ತದಲಿ
ಕೆದರಿದರು ಕರ್ಣಾದಿಗಳು ನೆರೆ
ಬೆದರಿದರು ಮತ್ತೊಂದು ದೆಸೆಯಲಿ
ಸದೆದು ಹೊಕ್ಕನು ಭೀಮ ಭಾರಿಯ ಮರದ ಕೊಂಬಿನಲಿ ೪೮

ತರುಬಿದನು ಮಾದ್ರೇಶ ಪವನಜ
ನುರುಬೆಯನು ಫಲುಗುಣನ ಬಾಣವ
ಮುರಿಯೆನುತ ರಾಧೇಯನಿರಿದನು ಸಿಂಹನಾದದಲಿ
ಕರುಬರೋ ಘನ ಯಂತ್ರಭೇದಿಯ
ನರಿದು ಕಾಡುವ ಕುರುಡರೋ ನೀ
ವಿರಿತಕಂಫೈಸಿದಿರೆನುತ ಕೈಕೊಂಡನಾ ಭೀಮ ೪೯

ತುರಗ ರಥ ಸಾರಥಿಗಳನು ಹೊ
ಯ್ದೊರಸಿದನು ಪವಮಾನಸುತನು
ಬ್ಬರದ ಭಯದಲಿ ಶಲ್ಯ ಹಿಮ್ಮೆಟ್ಟಿದನು ಹಿನ್ನೆಲೆಗೆ
ನರನ ಶರಹತಿಗಳುಕಿ ಮೋರೆಯ
ಮುರುಹಿದನು ಕಲಿಕರ್ಣನವದಿರು
ಸರಿಯೆ ವಿಪ್ರರು ನಮ್ಮ ವಿಗ್ರಹಕೆಂದು ಖಾತಿಯಲಿ ೫೦

ಅರಸ ನಡೆ ದ್ರುಪದನ ಕಪಾಲದ
ಲಿರಲಿ ಮಾನಚ್ಯುತಿ ಮಹೀಸುರ
ವರರೊಡನೆ ಖತಿಯೇಕೆ ತೆಗೆವುದು ಹಸ್ತಿನಾಪುರಕೆ
ನೆರಹುವುದು ನೃಪವರ್ಗವನು ಬಂ
ದೊರಸುವುದು ದ್ರುಪದನ ಲಲಾಟದ
ಬರಹವನು ಕೇಳೆಂದು ನುಡಿದನು ಕರ್ಣ ಕುರುಪತಿಗೆ ೫೧

ಅಹುದು ಕರ್ಣನ ಮಾತು ತೆಗೆಯಲಿ
ಬಹಳ ಬಲವೀ ಹೊತ್ತಿನಲಿ ರಣ
ವಿಹಿತವಲ್ಲೌಕಿದಡೆ ತಪ್ಪದು ವಿಪ್ರವಧೆ ತಮಗೆ
ಮಹಿಮೆ ಮೀಸಲು ಹೋಗದೀ ಸರ
ಲಹಿತ ದರ್ಪವ ಮುಂದೆ ನೋಡಲು
ಬಹುದೆನುತ ತಿರುಗಿದನು ಕುರುಪತಿ ಹಸ್ತಿನಾಪುರಿಗೆ ೫೨

ಹದಿನಾರನೆಯ ಸಂಧಿ

ಸೂ. ವಿಮಲಮುನಿ ಪಾಂಚಾಲ ಚಿತ್ತ
ಭ್ರಮೆಯನಪಹರಿಸಿದನು ದ್ರೌಪದಿ
ರಮಣಿಯಾದಳು ಹರನ ವರದಲಿ ಪಾಂಡು ತನಯರಿಗೆ

ಕೇಳು ಜನಮೇಜಯ ಧರಿತ್ರೀ
ಪಾಲ ಕೌರವನೃಪತಿ ಪಯಣದ
ಮೇಲೆ ಪಯಣದಲೈದಿ ಹೊಕ್ಕನು ಹಸ್ತಿನಾಪುರವ
ಹೇಳಲೇನುಳಿದಖಿಳ ಧರಣೀ
ಪಾಲಕರ ದುಮ್ಮಾನವನು ಪಾಂ
ಚಾಲ ದೇಶವ ಕಳೆದು ಹೊಕ್ಕರು ತಮ್ಮ ನಗರಿಗಳ ೧

ಭೀತಿ ಹರಿದುದು ರಾಯದಳ ಸಂ
ಘಾತ ಸರಿದುದು ಮತ್ತೆ ಸುಜನ
ವ್ರಾತ ನೆರೆದುದು ಮೆರೆದುದವನೀದೇವರಗ್ಗಳಿಕೆ
ವಾತಜನು ಮರಗೊಂಬಿನಲಿ ಮಾ
ರಾತನನು ಮನ್ನಿಸಿ ಕುಲಾಲ ನಿ
ಕೇತನಕೆ ಬಂದೆರಗಿದನು ಧರ್ಮಜನ ಚರಣದಲಿ ೨

ಇತ್ತಲರ್ಜುನನಿನಸುತನ ಬೆಂ
ಬತ್ತಿ ಮರಳಿದನವನಿಪಾಲರ
ಮುತ್ತಿಗೆಯ ತೆಗೆಸಿದನು ಜಯಲಕ್ಷ್ಮಿಯ ಕಟಾಕ್ಷದಲಿ
ಮತ್ತ ರಾಯರ ಬೆನ್ನಕಪ್ಪವ
ನೆತ್ತಿದುತ್ಸಹ ವದನದಲಿ ಹೊಗ
ರೆತ್ತಿದಕ್ಷಿಯ ಹೊಳಹಿನಲಿ ಹೊಕ್ಕನು ನೃಪಾಲಯವ ೩

ಈತನುದಯದೊಳಿಂದು ಭೂಸುರ
ಜಾತಿಗಾಯ್ತುಗ್ಗಳಿಕೆ ಪಾರ್ಥಿವ
ರಾತರಿಂದುಬ್ಬಟೆಯ ಧನುವಿಂದಿವನ ವಶವಾಯ್ತು
ಸೋತು ತೆಗೆದ ಮಹೀಶ್ವರರ ಮಾ
ತೇತಕದು ಮಝು ಪೂತೆನುತ ಜನ
ವೀತನನು ಕೊಂಡಾಡುತಿರ್ದುದು ನೆರವಿ ನೆರವಿಯಲಿ ೪

ಬಂದನೀತನು ಗತಿಯ ಗರುವಿಕೆ
ಯಿಂದ ತರುಣಿಯ ಹೊರೆಗೆ ಬಾ ನೀ
ನೆಂದು ಕರೆದನು ಸತಿಸಹಿತ ತಿರುಗಿದನು ವಹಿಲದಲಿ
ಇಂದುಮುಖಿಯನು ಕುಂಭಕಾರನ
ಮಂದಿರದ ಹೊರಗಿರಿಸಿ ಫಲುಗುಣ
ಬಂದು ಮೈಯಿಕ್ಕಿದನು ಕುಂತಿಯ ಚರಣಕಮಲದಲಿ ೫

ತಾಯೆ ಬಿನ್ನಹವಿಂದು ಧರಣೀ
ರಾಯರೆಲ್ಲರ ಗೆಲಿದು ತಂದೆನು
ನಾಯಕವನನುಪಮಿತ ಮೌಲ್ಯವನಮಲ ಮೌಕ್ತಿಕವ
ತಾಯೆ ಚಿತ್ತೈಸಿದಿರೆಯೆನೆ ಕಡೆ
ವಾಯಿದಳು ತನಿ ಹರುಷದಲಿ ಲೇ
ಸಾಯಿತೈವರು ಕೂಡಿ ಭೋಗಿಪುದೆಂದಳಾ ಕುಂತಿ ೬

ಎನೆ ಹಸಾದವೆನುತ್ತ ಕಮಲಾ
ನನೆಯು ಹೊಡವಂಡಿಸಿದನವ್ವೆಗೆ
ತನುಜ ನೀ ತಂದವುಲವಮೌಕ್ತಿಕವಿದೆಯೊ ಶಿವಯೆನುತ
ತನಗೆ ನುಡಿ ತೊದಲಿಸಿತಲಾ ನೀ
ವಿನಿಬರುಪಭೋಗಿಸುವುದೆಂದೆನು
ವನಿತೆಯೈವರಿಗರಸಿಯೇ ಲೇಸೆಂದಳಾ ಕುಂತಿ ೭

ಜನನಿ ತಪ್ಪದು ನಿಮ್ಮ ನುಡಿಯಿಾ
ವನಜಮುಖಿಯೆಮ್ಮೈವರಿಗೆ ಸತಿ
ವಿನುತ ಗುರುವಚನಾಂಬುನಿಧಿ ಮಕ್ಕಳಿಗಲಂಘ್ಯವಲೆ
ಎನೆ ಯುಧಿಷ್ಠಿರ ನೃಪತಿ ಪಾರ್ಥನ
ಕನಲಿದನು ಕಲಿ ಭೀಮನಲ್ಲೆಂ
ದನು ನಕುಲ ಸಹದೇವರನುಚಿತವೆಂದರರ್ಜುನಗೆ ೮

ಎಲ್ಲ ಧರ್ಮದ ಸಾರವನು ನೀವ್
ಬಲ್ಲಿರೈ ಸಲೆ ಹೇಳ್ವುದಾವುದು
ನಿಲ್ಲಿ ನೀವ್ ಸಹದೇವ ನಕುಲರು ನಿಮಗೆ ಮಾತೇಕೆ
ಬಲ್ಲಿರಖಿಳಾಮ್ನಾಯ ಭಾಷಿತ
ದಲ್ಲಿ ನೋಡಲು ಧರ್ಮಶಾಸ್ತ್ರದೊ
ಳೆಲ್ಲ ತಾಯಿಂದಧಿಕ ಗುರುವಿಲ್ಲೆಂದನಾ ಪಾರ್ಥ ೯

ಮಾತೃವಚನವಲಂಘ್ಯವಿದು ವಿ
ಖ್ಯಾತ ಪದ್ಧತಿ ಲೋಕಯಾತ್ರಾ
ಭೀತಿಯಲಿ ಭಯವೇಕೆ ಧರ್ಮರಹಸ್ಯನಿಷ್ಠರಿಗೆ
ಏತಕೀ ಲೋಕಾನುಸರಣೆ ವಿ
ಧೂತ ಕಿಲ್ಬಿಷವಾವುದದು ಧ
ರ್ಮಾತಿಶಯವಿಹಪರಕೆ ಕಡುಹಿತವೆಂದನಾ ಪಾರ್ಥ ೧೦

ರಾಗ ಲೋಭ ವ್ಯಾಪ್ತಿಯಲಿ ನೀ
ವೀ ಗುರುವಿಗಳುಪುವರೆ ಸಲೆ ಧ
ರ್ಮಾಗಮವನಾಚರಿಸುವದಲೇ ನಮ್ಮನುಷ್ಠಾನ
ಈಗಳೀ ಗುರುವಚನ ಧರ್ಮ
ತ್ಯಾಗವೇನಿದು ಧರ್ಮವೇ ಉಪ
ಭೋಗವೈವರಿಗೆಂದು ತಿಳುಹಿದನವರನಾ ಪಾರ್ಥ ೧೧

ಮಾಡದಿರಿ ಸಂದೇಹಗಳ ಖಯ
ಖೋಡಿಯಿದರೊಳಗಿಲ್ಲ ಧರ್ಮದ
ಮೂಡಿಗೆಯೊಳಂಬಿರಲಿ ಬಹಿರಂಗದಲಿ ಬಳಸದಿರಿ
ಗೂಡು ಹಲವಿಹ ಪಕ್ಷಿಯೊಂದಿದ
ನಾಡಬಾರದು ಸಾಕು ಚಿಂತಿಸ
ಬೇಡಿ ನೀವೆಂದನಿಬರನು ತಿಳುಹಿದನು ಕಲಿಪಾರ್ಥ ೧೨

ಆದುದನುಮತ ತಮ್ಮೊಳಗೆ ತ
ತ್ಸೋದರರು ಸೌಹಾರ್ದದಿಂದ ತ
ಳೋದರಿಯನೊಲಿದೈವರಂಗೀಕರಿಸಿದರು ಬಳಿಕ
ಆದರಣೆಯಲಿ ಕುಂತಿ ಸೊಸೆಗೆ ವೃ
ಕೋದರನ ಭಿಕ್ಷಾನ್ನ ಭಾಗದ
ಭೇದವನು ತಿಳುಹಿದಳು ತೊಡೆಯಲಿ ತೆಗೆದು ಕುಳ್ಳಿರಿಸಿ ೧೩

ಇಳಿದನಸ್ತಾಚಲಕೆ ರವಿ ನೃಪ
ತಿಲಕರೈವರು ವಿಹಿತಕೃತ್ಯಾ
ವಳಿಗಳನು ವಿಸ್ತರಿಸಿ ಕುಂತಿಯ ಚರಣಕಭಿನಮಿಸಿ
ಜಲರುಹಾಕ್ಷನ ನಾಮಕೀರ್ತನ
ಲುಳಿತ ಪರಮಾನಂದರಸದಲಿ
ಮುಳುಗಿ ಮೂಡುತ್ತಿರ್ದರಂದು ಕುಲಾಲ ಭವನದಲಿ ೧೪

ಸಿಲುಕಿದುದು ಜನದೃಷ್ಟಿ ಬಲುಗ
ತ್ತಲೆಯ ಬಂಧದೊಳಂಧಕಾರದ
ಜಲಧಿಯಲಿ ಜಗವದ್ದುದೇನೆಂಬೆನು ಮಹಾದ್ಭುತವ
ನಳಿನಮಿತ್ರನ ಬೇಹುಕಾರರ
ಸುಳಿವೊ ತಿಮಿರದ ಪಾಳೆಯದೊಳೆನೆ
ನಿಳಯದ ಸೊಡರು ತಳಿತುದು ಕೂಡೆ ನಗರಿಯಲಿ ೧೫

ಇವರಿಗುಂಟೇ ದೀಪ ತೈಲ
ದ್ರವಿಣವಿಲ್ಲ ಕುಲಾಲ ಭವನಕೆ
ಕವಿವ ಕಗ್ಗತ್ತಲೆಯ ನುಗ್ಗೊತ್ತಿದುದು ಬೇರೊಂದು
ನವಯುವತಿಯಾಭರಣ ಮಣಿರುಚಿ
ನಿವಹವಾಕೆಯ ನಯನಕಾಂತಿಗ
ಳವನಿಪತಿ ಕೇಳ್ ನಿನ್ನ ಪಿತನ ಪಿತಾಮಹರ ಪರಿಯ ೧೬

ಜನಪ ನಂದನೆಗೊಂದು ಕೃಷ್ಣಾ
ಜಿನವನಿತ್ತರು ಶಯನ ಭಾಗಕೆ
ಜನನಿಯಂಘ್ರಿಯ ಬಳಿಯಲೊರಗಿದರೈವರೊಂದಾಗಿ
ವನಿತೆಯವರಂಘ್ರಿಗಳ ತಲೆಗಿಂ
ಬಿನಲಿ ಮಲಗಿದಳಂದಿನಾಹವ
ಜನಿತ ಕೃತಿಯನು ನುಡಿವುತಿರ್ದನು ಪಾರ್ಥನರಸಂಗೆ ೧೭

ಗೆಲಿದ ಪರಿಯನು ಕೌರವೇಂದ್ರನ
ದಳವ ಮುರಿದಂದವನು ಕರ್ಣನ
ನಳುಕದೆಚ್ಚ ಶರಪ್ರಯೋಗದ ಚಾಪಕೌಶಲವ
ಬಲಜಲಧಿ ಮುಕ್ಕುರಿಕಿದರೆ ಮುಂ
ಚಲಿಸಿ ಮೊಗೆದಂದವನು ಶಸ್ತ್ರಾ
ವಳಿಯ ಸಂಹರಣವನು ವಿವರಿಸಿದನು ಮಹೀಪತಿಗೆ ೧೮

ಕುದುರೆಯೇರಾಟವನು ಮಾತಂ
ಗದ ಸುಶಿಕ್ಷಾಭೇದವನು ರಥ
ವಿದಿತ ಕೌಶಲವನು ಶರಾಸನವೇದ ಸಂಗತಿಯ
ಮದವದರಿ ಭಂಜನವ ದಿವ್ಯಾ
ಸ್ತ್ರದಲಿ ಮುಕ್ತಾಮುಕ್ತಸಮರಂ
ಗದ ಸುಸಂಗತಿಯಿಂದ ನೂಕಿದರಿವರು ಯಾಮಿನಿಯ ೧೯

ಆಯುಧದ ಲಕ್ಷಣವನಾ ದಿ
ವ್ಯಾಯುಧದ ಮಂತ್ರಪ್ರಭಾವವ
ನಾಯುಧದ ವಿವಿಧ ಪ್ರಯೋಗವನದರ ಪರಿವಿಡಿಯ
ರಾಯರಂಗದ ಶಕ್ತಿವರ್ಗದು
ಪಾಯಗುಣ ವಿಕ್ರಮ ಪರಾಕ್ರಮ
ನಾಯಕರ ಗುಣಕಥನದಲಿ ನೂಕಿದರು ಯಾಮಿನಿಯ ೨೦

ಮುನಿವಳೀ ಸತಿಯೆಂದು ನಿದ್ರಾಂ
ಗನೆಯು ನೂಕಿದರವನಿಪರು ಭಾ
ಮಿನಿ ಸಹಿತಲಿರಲಿತ್ತಲೀ ಪಾಂಚಾಲ ಭೂಪತಿಯ
ತನುಜನಿವರ ಪರೀಕ್ಷೆಗೋಸುಗ
ಮುನಿಪ ಕಾಶ್ಯಪಗೂಡಿ ಕೇಳಿದ
ನನಿತು ಮಾತೆಲ್ಲವನು ಮರೆಯಲಿ ನಿಂದು ರಜನಿಯಲಿ ೨೧

ಬಂದು ಧೃಷ್ಟದ್ಯುಮ್ನನಯ್ಯಂ
ಗೆಂದನಿನನಸ್ತಮಯ ಸಂಧ್ಯಾ
ವಂದನೆಯು ತರುವಾಯ ಶಸ್ತ್ರಾಸ್ತ್ರಪ್ರಸಂಗದಲಿ
ಸಂದ ಗಜ ಹಯ ರಥದ ಪರಿವಿಡಿ
ಯಿಂದವರು ನೃಪನೀತಿ ಸಂಗತಿ
ಯಿಂದ ರಾತ್ರಿಯ ಕಳೆದರಾರೆಂದರಿಯೆ ನಾನೆಂದ ೨೨

ಧರಣಿಪತಿ ಕೇಳ್ ವಿಪ್ರರಾದರೆ
ಸರಸ ನವ ಭೋಜನದ ಕಥೆ ಮೇಣ್
ನಿರತಿಶಯ ವೇದಾಂಗ ವೇದ ತದರ್ಥ ತರ್ಕಗಳು
ಅರಸುಗಳಿಗಾಯುಧದ ಗಜ ರಥ
ತುರಗದೇರಾಟದ ಮಹಾಸ್ತ್ರದ
ವಿರಚನೆಗಳಿವು ಜಾತಿವಿದ್ಯೆಗಳೆಂದನಾ ಮುನಿಪ ೨೩

ಭೂರಿ ಧನ ವರ್ಧನ ಸದಾ ವ್ಯವ
ಹಾರ ಲಾಭಾಲಾಭ ಚಿಂತೆಗ
ಳೂರುಜನಿತರಿಗಂತ್ಯವರ್ಣಕೆ ಕೃಷಿಯ ಮಾತುಗಳು
ಆರನಾದರು ಜಾತಿಧರ್ಮದ
ಸೇರುವೆಗಳೇ ಹೇಳುವುವು ನ
ಮ್ಮಾರಯಿಕೆಗಿವರಿಂದು ಕ್ಷತ್ರಿಯರೆಂದು ಮುನಿ ನುಡಿದ ೨೪

ಇವರು ಪಾರ್ಥಿವರೊಳಗೆ ಕೇಳ್ ಪಾಂ
ಡವರು ನಿಸ್ಸಂದೇಹವೆಂದೇ
ನಿವಗೆ ನಾವೆನ್ನೆವೆ ವಿವಾಹದ ಪೂರ್ವಕಾಲದಲಿ
ಅವರನುಪಚರಿಸೇಳು ರಚಿಸು
ತ್ಸವವನಾಯ್ತಿದೆ ಪೂರ್ವಗಿರಿಯಲಿ
ರವಿಯುದಯವೆಂದಾ ಪುರೋಹಿತ ತಿಳುಹಿದನು ನೃಪನ ೨೫

ಒಸಗೆಯಾಯಿಂತು ಮತ್ತೆ ಗುಡಿಯೆ
ತ್ತಿಸಿತು ನಗರಿಯೊಳಧಿಕ ಹರುಷ
ಪ್ರಸರದಲಿ ರೋಮಾಳಿ ಪಲ್ಲವಿಸಿದುದು ನರಪತಿಯ
ಬಿಸಜಬಂಧುವಿನುದಯದಲಿ ನೃಪ
ವಿಸರಸಹಿತ ಕುಲಾಲಭವನದ
ವಸುಮತೀ ವಲ್ಲಭರ ಕಂಡನು ಬಂದು ಪಾಂಚಾಲ ೨೬

ಏಳಿ ಬಿಜಯಂಗೈವುದೆಂದು ನೃ
ಪಾಲಕರನುಚಿತದಲಿ ನಿಜ ರಾ
ಜಾಲಯಕೆ ತಂದನು ನಿರೀಕ್ಷಿಸುತನಿಬರಿಂಗಿತವ
ಮೇಲು ಮೊಗದ ಗಭೀರ ಗತಿಯ ಭ
ಡಾಳವನು ಕಂಡಿವರು ರಾಯರ
ಪೀಳಿಗೆಗಳಹುದೆಂದು ನಿಶ್ಚೈಸಿದನು ಮನದೊಳಗೆ ೨೭

ಮುದದಿ ಮಂಗಳ ಮಜ್ಜನವ ಮಾ
ಡಿದರು ದಿವ್ಯಾಂಬರವನುಟ್ಟರು
ಸುದತಿಯರ ಹರಿವಾಣದಾರತಿಗಳನು ಕೈಗೊಳುತ
ಪದಕ ಕರ್ಣಾಭರಣ ಹಾರಾಂ
ಗದದಿನೊಪ್ಪಂಬಡೆದಿವರು ಪೂ
ಸಿದರು ಸಾದು ಜವಾಜಿ ಕಸ್ತುರಿ ಯಕ್ಷಕರ್ದಮವ ೨೮

ಬಾಸಿಗದ ನೊಸಲಿನಲಿ ಮೆರೆವ ಮ
ಹೀಶರೈವರು ಮಂಟಪದ ನೆಲ
ವಾಸಿನಲಿ ಕುಳ್ಳಿರ್ದರನುಪಮ ರಾಜತೇಜದಲಿ
ಆ ಸೊಸೆಯು ಸಂಗಾತ ಕುಂತಿ ವಿ
ಲಾಸದಲಿ ಕುಳ್ಳಿರ್ದಳಾ ವಿ
ನ್ಯಾಸವನು ಜನ ನೋಡುತಿರ್ದುದು ಬಿಗಿದ ಬೆರಗಿನಲಿ ೨೯

ಜಲವನಂಜುಳಿಯಿಂದ ದ್ರುಪದನು
ಸೆಳೆದು ಮೆರೆದವ ಬರಲಿ ಯಂತ್ರವ
ಗೆಲಿದ ಗರುವನು ನಿಮ್ಮ ಪಂಚಕರೊಳಗೆಯೆನೆ ನಗುತ
ಇಳಿದನವನಿಪ ಭೀಮನೊಯ್ಯನೆ
ಸುಳಿದನರ್ಜುನ ಹಿಂದೆ ಯಮಳರು
ನಳಿನವದನೆಯ ಹೊರಗೆ ಬಂದರು ಭೂಪ ಕೇಳೆಂದ ೩೦

ಬಿಸುಟನಂಜುಳಿಯುದಕವನು ನಿ
ಪ್ಪಸರದಲಿ ಬೆರಗಾಗಿ ಭೂಪರ
ಮುಸುಡನೆವೆಯಿಕ್ಕದೆ ನಿರೀಕ್ಷಿಸುತೆಂದನಾ ದ್ರುಪದ
ಅಸುರರೋ ಸುರರೋ ಭುಜಂಗರೊ
ವಸುಮತೀಶರೊ ನೀವು ದಿಟ ಮಾ
ನಿಸರ ಪರುಠವವಲ್ಲ ನೀವಾರೆಂದು ಬೆಸಗೊಂಡ ೩೧

ಈತನಗ್ಗದ ಭೀಮನರ್ಜುನ
ನೀತನಿವರೈ ಯಮಳರೆಂಬವ
ರೀತಗಳು ನಮ್ಮಿಂದ ಕಿರಿಯರು ನಾವು ಪಾಂಡವರು
ಮಾತೆಯೆಮ್ಮೈವರಿಗೆ ಜಗವಿ
ಖ್ಯಾತೆ ಕುಂತೀದೇವಿ ತಾನಿಂ
ದೀ ತಳೋದರಿಯಾದಳೆಮ್ಮೈವರಿಗೆ ವಧುವೆಂದ ೩೨

ಕೊಂಡು ಹರಿದುದು ಹರುಷವಾ ಬ್ರ
ಹ್ಮಾಂಡದಗ್ರಕೆ ಮಗಳಿಗೈವರು
ಗಂಡರೆನೆ ಮಗುಳದ್ದುದಾತನ ಮನ ರಸಾತಳಕೆ
ಕಂಡು ಬಲ್ಲರೆ ಕಂಗಳಲಿ ಕಿವಿ
ಕೊಂಡು ಕೇಳ್ದಿರೆ ಮುನ್ನ ನಮಗೀ
ಭಂಡತನವನು ಮಾಡುವರೆ ನೀವೆಂದನಾ ದ್ರುಪದ ೩೩

ಲೋಕಸಂಮತವಲ್ಲ ಶಾಸ್ತ್ರಾ
ನೀಕದಭಿಮತವಲ್ಲ ಕಾಪಥ
ವೇಕೆ ನಿಮಗಿದು ಪಾಂಡುಪುತ್ರರು ನೀವು ಧಾರ್ಮಿಕರು
ಪ್ರಾಕೃತರೇ ನೀವಕಟ ನಿಮ್ಮ ವಿ
ವೇಕವೇನಾಯ್ತಿಲ್ಲಿ ಇಹ ಪರ
ಲೋಕಕಿದು ಸಾಧನವೆಯೆಂದನು ದ್ರುಪದ ಭೂಪಾಲ ೩೪

ಕಾಮಮೋಹಿತರಲ್ಲ ವಿಷಯ
ಸ್ತೋಮಭಂಗಿತರಲ್ಲ ಧರ್ಮದ
ಸೀಮೆಯೊಳಗೆಳ್ಳಿನಿತನವಮಾನಿಸುವರಾವಲ್ಲ
ಈ ಮಹಾಸತಿಯೆಮಗೆ ಜನನಿಯ
ನೇಮದಲಿ ವಧುವಾದಳಿಂದು ವಿ
ರಾಮವೇಕೆ ವಿವೇಕಕೆಂದನು ಧರ್ಮಸುತ ನಗುತ ೩೫

ಏಕಪತಿ ಬಹುಸತಿಯರೆಂಬುದು
ಲೋಕಪದ್ಧತಿ ಕಂಡೆವಾವಿಂ
ದೇಕ ಪತ್ನಿಗೆ ಪುರುಷಪಂಚಕವನು ಮಹಾದೇವ
ಲೋಕಶಾಸ್ತ್ರ ವಿರುದ್ಧವನು ಕಿವಿ
ಯೊಕರಿಸುತಿವೆ ಕರ್ಣ್ಣನಕೆ ಸು
ವ್ಯಾಕುಲತೆ ಹಿರಿದಾದುದೆಂದನು ದ್ರುಪದ ಭೂಪಾಲ ೩೬

ಆ ಸಮಯದಲಿ ದೇವ ವೇದ
ವ್ಯಾಸಮುನಿಯೈತಂದನಲ್ಲಿ ಮ
ಹೀಶಸಭೆಯಿದಿರೆದ್ದು ಕಂಡುದು ಕಾಣಿಕೆಯ ನೀಡಿ
ದೋಷಗರ್ಭಿತ ಧರ್ಮವನು ನಿ
ರ್ದೈಸಲರಿಯದ ಮೂಢಮತಿಗೆ ಮು
ನೀಶ ಕೃಪೆ ಮಾಡೆಂದು ಮೈಯಿಕ್ಕಿದನು ಪಾಂಚಾಲ ೩೭

ನೆಗಹಿದನು ದ್ರುಪದನನು ಯಮಜಾ
ದಿಗಳನೆತ್ತಿದನೊಬ್ಬರೊಬ್ಬರ
ತೆಗೆದು ತಕ್ಕೈಸಿದನು ಮುದದಲಿ ಪಾಂಡುನಂದನರ
ದುಗುಡವೇಕೈ ದ್ರುಪದ ನಿನ್ನಯ
ಮಗಳ ಸೌಭಾಗ್ಯದಲರುಂಧತಿ
ಸೊಗಸಿ ರಂಜಿಸಲರಿಯಳೆಂದನು ಕೃಷ್ಣಮುನಿ ನಗುತ ೩೮

ಅಹುದಲೇ ಬಳಿಕೇನು ತಂಗಿಯ
ಬಹಳ ಸುಕೃತೋದಯದಲರಗಿನ
ಗೃಹದ ಗಂಟಲನೊದೆದು ಸುಳಿದರು ಪಾಂಡುನಂದನರು
ಗಹನ ಯಂತ್ರವನೆಚ್ಚ ಪಾರ್ಥನ
ಮಹಿಳೆಗೆನ್ನ ಕುಮಾರಿಗೀಗಲು
ಬಹುಪತಿಗಳಾಯ್ತಿದನು ನೀವ್ ನಿರ್ಣೈಸಬೇಕೆಂದ ೩೯

ದ್ರುಪದ ಧೃಷ್ಟದ್ಯುಮ್ನ ಪಾಂಡವ
ನೃಪರು ಕಾಶ್ಯಪಗೂಡಿ ಹೊಕ್ಕರು
ವಿಪುಳತರ ಕಾರುಣ್ಯದಿಂದೇಕಾಂತ ಮಂದಿರವ
ನೃಪತಿ ಸಂಶಯವೇಕೆ ನಾವಿದ
ನಪಹರಿಸುವೆವು ಪಾಂಡುಪುತ್ರರ
ನುಪಚರಿಸು ವೈವಾಹವನು ವಿಸ್ತರಿಸು ಸಾಕೆಂದ ೪೦

ವಿಧಿವಿಹಿತ ಲೋಕಾಪವಾದವ
ನಧಿಕರಿಸಿ ವರ್ಣಾಶ್ರಮಕೆ ಸು
ವ್ಯಧಿಕರಣ ಹುಗದಂತೆ ಸದ್ವ್ಯವಹಾರ ಮಾರ್ಗದಲಿ
ವಿಧಿಸಿದರೆ ನಿಮ್ಮಂಘ್ರಿಗಳ ಸಂ
ನಿಧಿಯಲೇ ಪಾಣಿಗ್ರಹಣವನು
ವಿಧುಮುಖಿಗೆ ಮುದದಿಂದ ಮಾಡುವೆನೆಂದನಾ ದ್ರುಪದ ೪೧

ಧರಣಿಪತಿ ಕೇಳಿವರ ತಾಯ್ಮುಂ
ದರಿಯದಾಡಿದಳಾ ನುಡಿಯನು
ತ್ತರಿಸಬಾರದು ಧರ್ಮವಿದು ವರಮಾತೃಭಕ್ತರಿಗೆ
ಗುರುವಚನದ ನಿಮಿತ್ತ ವರ ಪತಿ
ಕರಿಸಿ ಚರಿಸಿದ ಪೂರ್ವಜನ್ಮದ
ಸರಸಿಜಾಕ್ಷಿಯ ಕಥೆಯನರುಪುವೆನಿನ್ನು ಕೇಳೆಂದ ೪೨

ಮುನ್ನ ನಾರಾಯಣಿಯೆನಿಪುದೀ
ಕನ್ನಿಕೆಯು ಪೆಸರೊಬ್ಬ ಗುಣ ಸಂ
ಪನ್ನ ಮುನಿಪನ ವಧು ಪತಿವ್ರತೆಯರಿಗೆ ಗುರುವೆನಿಸಿ
ಉನ್ನತೋನ್ನತ ಭಕ್ತಿ ಭಯದಲಿ
ತನ್ನ ಪತಿ ಪರದೈವವೆಂದು ವಿ
ಪನ್ನನನು ಕೊಂಡಾಡುತಿರ್ದಳು ರಾಯ ಕೇಳೆಂದ ೪೩

ಆ ತಪೋನಿಧಿ ಕುಷ್ಠರೋಗ ಪ
ರೀತ ಬೀಭತ್ಸೆಯಲಿ ಹುದುಗಿರ
ಲೀ ತಳೋದರಿ ಭಜಿಸುತಿರ್ದಳು ಭಾವಶುದ್ಧಿಯಲಿ
ಆತನೀಕೆಯ ಕೃತ್ಯದಲಿ ಭಾ
ವಾತಿಶಯದಲಿ ಖೋಡಿಯನು ಹಿಡಿ
ವಾತನಾಗಿರಲೊಂದು ದಿನವಿಂತಾಯ್ತು ಕೇಳೆಂದ ೪೪

ಕೊಳೆತ ಬೆರಳನು ಭುಕ್ತ ಶೇಷದೊ
ಳಳುಹಿದರೆ ಕಂಡೀಕೆ ಚಿತ್ತದೊ
ಳಳುಕದುಪಭೋಗಿಸೆ ಮುನೀಶ್ವರನದಕೆ ಹರುಷದಲಿ
ಎಲೆಗೆ ಮೆಚ್ಚಿದೆನಿನ್ನು ನೀ ಮನ
ವೊಲಿದುದನು ಬೇಡೆನಲು ಬಳಿಕಾ
ಲಲನೆ ನುಡಿದಳು ದಿವ್ಯರೂಪಿನೊಳೆನ್ನ ನೆರೆಯೆಂದು ೪೫

ದ್ರುಪದ ಕೇಳಾ ಕುಷ್ಠದೇಹವ
ನಪಹರಿಸಿ ಕಂದರ್ಪ ರೂಪಿನೊ
ಳುಪಚರಿಸಿ ಕಾಮಿನಿಯನವನತಿ ಕಾಮಕೇಳಿಯಲಿ
ತಪಸಿ ದಣಿದನು ತನ್ನ ಮುನ್ನಿನ
ತಪವ ನೆನೆದನು ದಣಿಯದಿರೆಯಾ
ಚಪಲಲೋಚನೆ ಸೆರಗ ಹಿಡಿದಳು ಹೋಗದಿರಿಯೆನುತ ೪೬

ದಿಟ್ಟ ಹೆಂಗುಸೆ ನೃಪರ ಬಸುರಲಿ
ಹುಟ್ಟು ನೀ ಹೋಗೆಂದು ಶಾಪವ
ಕೊಟ್ಟನೀಕೆಗೆ ಹಾಯ್ದನಾ ಮುನಿಪತಿ ತಪೋವನಕೆ
ನಟ್ಟಡವಿಯಲಿ ನಳಿನಮುಖಿ ಕಂ
ಗೆಟ್ಟು ಭಜಿಸಿದಳಖಿಳ ದುರಿತಘ
ರಟ್ಟನನು ದಿವಿಜೇಂದ್ರವಂದ್ಯನನಿಂದುಶೇಖರನ ೪೭

ಹಲವು ಕಾಲದಿ ತಪದೊಳಕಟಾ
ಬಳಲಿದಳಲಾ ಮುನಿಯ ವಧುವೆಂ
ದಿಳಿದನೀಶ್ವರನಾ ತಪೋವನಕಾಕೆಯೆದುರಿನಲಿ
ಸುಳಿಯೆ ಕಂದೆರೆದಬಲೆ ಕಂಡಳು
ಸುಲಭನನು ಭಕ್ತರಿಗೆ ತರ್ಕಾ
ವಳಿಗೆ ದುರ್ಲಭನನು ದುರಾಸದ ಮಹಿಮ ಧೂರ್ಜಟಿಯ ೪೮

ತರುಣಿ ಮೈಯಿಕ್ಕಿದಳು ಕರದಲಿ
ಶಿರವ ನೆಗಹಿದಳಬುಜಲೋಚನೆ
ವರವ ಕೊಟ್ಟೆನು ಬೇಡಿಕೊಳ್ಳೆನೆ ತರುಣಿ ತಲೆವಾಗಿ
ಹರಪತಿಂ ದೇಹಿ ಪ್ರಭೋ ಶಂ
ಕರ ಪತಿಂ ದೇಹಿ ಪ್ರಭೋಯೆಂ
ದರಸಿ ಬೇಡಿದಳೈದು ಬಾರಿ ಮಹೇಶನಲಿ ವರವ ೪೯

ಆದಡೈವರು ಪತಿಗಳಹರು ತ
ಳೋದರಿಯೆ ನಿನಗೆನಲು ಬೆಚ್ಚಿದ
ಳೀ ದುರಿತ ತನಗೇಕೆನುತ ಸತಿ ಮುಚ್ಚಿದಳು ಕಿವಿಯ
ಆದಡಂಜದಿರಂಜದಿರು ವರ
ವೇದಬಾಹಿರವಲ್ಲ ಸತಿಯರೊ
ಳಾದಿ ಪಾತಿವ್ರತ್ಯ ನಿನಗೆಂದನು ಮಖಧ್ವಂಸಿ ೫೦

ಶ್ರುತಿಗಳೆಂಬುದೆಯೆಮ್ಮ ನುಡಿ ಸಂ
ಸ್ಮೃತಿಗಳೆಮ್ಮಯ ಚೇಷ್ಟೆ ಧರ್ಮದ
ಗತಿ ವಿಚಾರಿಸಲೆಮ್ಮ ನೇಮವು ವಿಹಿತ ವಿಧಿಯೆಂದು
ಕ್ರತುಗಳೀ ಮನ್ವಾದಿಗಳು ಸುರ
ತತಿಗಳಬುಜಭವಾದಿ ದೇವ
ಪ್ರತತಿಯೆನ್ನಾಜ್ಞೆಯೊಳಗೆಂದಾ ಸತಿಗೆ ಶಿವ ನುಡಿದ ೫೧

ನಿನ್ನ ಕಥನವೆ ಪುಣ್ಯಕಥನವು
ನಿನ್ನ ಚರಿತವೆ ಪುಣ್ಯಚರಿತವು
ನಿನ್ನ ನೆನೆದಂಗನೆಗೆ ಬಹುದು ಪತಿವ್ರತಾಭಾವ
ಎನ್ನನುಜ್ಞೆಗೆ ಧರ್ಮ ಚಿಂತಾ
ಪನ್ನೆಯಾಗದಿರೆಂದು ಕೃಪೆಯಲಿ
ತನ್ನ ಸಿರಿ ಕರತಳವನಿರಿಸಿದನುತ್ತಮಾಂಗದಲಿ ೫೨

ಹರನ ನುಡಿಯೇ ವೇದ ಹರನಾ
ಚರಣೆಯೇ ಸನ್ಮಾರ್ಗ ಹರ ಪತಿ
ಕರಿಸಿ ನುಡಿದುದೆ ಪರಮಪಾವನ ಧರ್ಮತತ್ವವದು
ಬರಹ ಸಹಿತಾ ವಿಧಿಯನೊರಸಲು
ಹರ ಸಮರ್ಥನು ಹರನ ಬರಹವ
ನೊರಸಲಾಪರ ತೋರಿಸಾ ಬ್ರಹ್ಮಾದಿ ದೇವರಲಿ ೫೩

ಅದರಿನೈವರಿಗೀಕೆ ವಧುವೆಂ
ಬುದು ಮಹೇಶ್ವರನಾಜ್ಞೆ ನೀನಿಂ
ದಿದಕೆ ಚಿಂತಿಸಬೇಡ ಬಳಿಕಾ ಪಾಂಡುನಂದನರ
ಹದನನರುಹುವೆ ಕೇಳು ನೃಪ ಪೂ
ರ್ವದಲಿ ಸುರಪತಿ ಶಂಕರನ ಶಾ
ಪದಲಿ ನವೆದನು ಹಲವು ಯುಗ ಕೈಲಾಸ ಕುಹರದಲಿ ೫೪

ಬಳಿಕಲಿಂದ್ರನು ಮರವೆಯಲಿ ಕಳ
ವಳಿಸಲಾತಂಗೀತನಂದದಿ
ಹಲವು ಯುಗ ಸೆರೆಸಾಯ್ತು ರಜತಾಚಲದ ಕುಹರದಲಿ
ಬಿಲದಲೀ ಪರಿಯೈವರಿಂದ್ರರು
ಸಿಲುಕಿದರು ಶಂಕರನ ಖತಿಯಲಿ
ಬಳಿಕ ಬಿಡುಗಡೆಯಾಯ್ತು ಕಾತ್ಯಾಯನಿಯ ದೆಸೆಯಿಂದ ೫೫

ಜನಿಸುವುದು ನೀವೈವರಿಂದ್ರರು
ಮನುಜ ಲೋಕದೊಳರಸು ಕುಲದಲಿ
ವನಿತೆ ನಿಮ್ಮೈವರಿಗೆಯಹಳೊಬ್ಬಳೆ ನಿಧಾನವಿದು
ಎನಲು ನಡುಗಿದರಕಟ ವೊದಲಲಿ
ಮನುಜ ಜನ್ಮವೆ ಕಷ್ಟವದರೊಳು
ವನಿತೆಯೊಡಹುಟ್ಟಿದರಿಗೊಬ್ಬಳೆ ಶಿವಶಿವಾಯೆಂದ ೫೬

ಹರಹರ ತ್ರಾಯಸ್ವ ಕರುಣಾ
ಕರ ಮಹಾದೇವೀ ದುರಂತದ
ನರಕ ಭಾಜನಮುಚಿತವೇ ನಿಮ್ಮಂಘ್ರಿದರ್ಶನಕೆ
ಕರುಣಿಸೈ ಮತ್ತೊಂದು ಪರಿಯಲಿ
ವರವನೆನೆ ನಸುನಗುತ ಗೌರೀ
ವರನು ತಿಳುಹಿದನೈವರಿಂದ್ರರಿಗರಸ ಕೇಳೆಂದ ೫೭

ಖೇದತನವೇಕೆಳ್ಳನಿತು ಖಿಯ
ಖೋಡಿಯಿದರೊಳಗಿಲ್ಲ ಮುನಿವಧು
ಬೇಡಿದಳು ಪೂರ್ವದಲಿ ವರವನು ಪಂಚವಾಕ್ಯದಲಿ
ಜೋಡೆನಿಸಿದಳು ನಾರಿ ಧರ್ಮಕೆ
ಕೇಡು ಬಾರದು ನಿಮ್ಮ ನೆರೆ ಕೆ
ಟ್ಟಾಡಿದರ ಬಾಯ್ ಹುಳುವುದೆಂದನು ಬಾಲಶಶಿಮೌಳಿ ೫೮

ಎನೆ ಹಸಾದದಲಿಂದುಶೇಖರ
ನನು ಸುರೇಂದ್ರರು ಬೀಳುಕೊಂಡರು
ಜನಿಸಿದರು ಬಳಿಕಿವರು ಮಹಿಯಲಿ ಮರ್ತ್ಯರೂಪಾಗಿ
ನಿನಗೆ ಮಗಳೀ ವನಿತೆ ಕುಂತಿಯ
ತನುಜರಿವರಳಿಯಂದಿರೇ ನೀ
ನೆನಿತು ಧನ್ಯನೊ ಶಿವಯೆನುತ ತಲೆದೂಗಿದನು ಮುನಿಪ ೫೯

ಎಲೆ ಮರುಳೆ ಪೂರ್ವದಲಿ ತಾವ್ ತ
ಮ್ಮೊಳಗೆಯೈವರು ಜನಿಸೆ ನಿನ್ನೀ
ನಳಿನಮುಖಿಗಿವರೆಲ್ಲ ವರಗಳು ಪಾಂಡುನಂದನರು
ತಿಳಿಯದಿರೆ ನೋಡಾದೊಡೆನುತ
ಗ್ಗಳೆಯ ಮುನಿಪತಿ ದಿವ್ಯದೃಷ್ಟಿಯ
ಸಲಿಸಿದಡೆ ನೋಡಿದನು ದ್ರುಪದನು ಪಾಂಡುನಂದನರ ೬೦

ಮೆರೆವ ದೇಹಪ್ರಭೆಗಳಲಿ ಮಿರು
ಮಿರುಪ ದಿವ್ಯಾಭರಣ ಕಿರಣದ
ತುರುಗಿನಲಿ ತನಿ ಹೊಳೆವ ದಿವ್ಯಾಂಬರದ ಕಾಂತಿಯಲಿ
ಅರಿವಡಾಯ್ತೆಲ್ಲವಯವದ ಕಂ
ದರೆವ ತೇಜಃಪುಂಜ ರಸಮಯ
ದೆರಕವೆನಲಿವರೈವರೊಪ್ಪಿದರಿಂದ್ರ ತೇಜದಲಿ ೬೧

ಮನದ ಝೊಮ್ಮಿನ ಝುಡಿವ ರೋಮಾಂ
ಚನದ ಹುದುಗುವ ಹೊದರುಗಂಗಳ
ಜಿನುಗುವಾತಿನ ಹೂತ ಹರುಷದ ಹೊಂಗಿದುತ್ಸವದ
ಕೊನರೊ ಬೆವರಿನ ಕಳಿದ ಚಿಂತೆಯ
ಮನದ ಭಾವದ ರಾಗರಸದು
ಬ್ಬಿನಲಿ ಹೊಂಪುಳಿ ಹೋದನವರನು ಕಂಡು ಪಾಂಚಾಲ ೬೨

ಅರಸ ಕಂಡೈ ನರಪತಿಗಳೋ
ಸುರಪತಿಗಳೋ ಮನದ ಸಂಶಯ
ಹರಿದುದೇ ಹಳಿವಿಲ್ಲಲೇ ಲೇಸಾಗಿ ನೋಡೆನಲು
ಪರಮಋಷಿ ನೀ ಪುಣ್ಯದಲಿ ಗೋ
ಚರಿಸಿದೈ ನಿಮ್ಮಡಿಯ ನೇಮವ
ಶಿರದೊಳಾಂತೆನು ಧನ್ಯ ತಾನೆಂದರಸ ಕೈಮುಗಿದ ೬೩

ನಂಬಿದೈ ಲೇಸಾಗಿ ಲಗ್ನ ವಿ
ಲಂಬವಾಗದೆ ಧಾರೆಯೆರೆ ಕಲ
ಶಾಂಬುವಿದೆ ನೀ ಹೋಗು ಕಾಶ್ಯಪ ಹೋಮ ಸಾಧನವ
ತುಂಬು ವಹಿಲದಲವನಿಯಮರ ಕ
ದಂಬ ನೆರೆಯಲಿಯೆನಲು ದ್ರುಪದನ
ಹೊಂಬೆಳೆಯು ತನಿ ಹರುಷ ಹೊಡೆದೋರಿದುದು ಪುಳಕದಲಿ ೬೪

ಸಾರಿದರು ಮೆಂಟ್ಟಕ್ಕಿಗಳ ಗುಡ
ಜೀರಿಗೆಗಳೊದಗಿದವು ಲಗ್ನವಿ
ಹಾರದಾಶೀರ್ವಾದದಾಯತ ರವದ ರಭಸದಲಿ
ಧಾರೆಯೆರೆದನು ದ್ರುಪದ ಪಾಂಡು ಕು
ಮಾರರಿಗೆ ನಿಜಸುತೆಯನತಿ ವಿ
ಸ್ತಾರಿಸಿತು ವೈವಾಹರಚನೆ ವಿಶಾಲವಿಭವದಲಿ ೬೫

ಹೋಮ ಸಮನಂತರದಲಖಿಳ ಧ
ರಾಮರರ ಪೂಜೆಯಲಿ ಭೂತ
ಸ್ತೋಮ ತುಷ್ಟಿಯ ಮಾಡಿದುದು ಸನ್ಮಾನ ದಾನದಲಿ
ಆ ಮುನೀಂದ್ರಂಗೆರಗಿದರು ನೃಪ
ರೀ ಮಹಾಸತಿಸಹಿತ ವಿಮಲ
ಪ್ರೇಮದಲಿ ಮೈಮುಳುಗಿ ತೆಗೆದಪ್ಪಿದನು ಪಾಂಡವರ ೬೬

ಪರಮ ವೈಭವದಲಿ ಚತುರ್ಥಿಯ
ಮರುದಿವಸದೋಕುಳಿಯ ಪುರಜನ
ಪರಿಜನದ ಸುಮ್ಮಾನ ಶರಧಿಯ ಸಾರಸಂಪಡವ
ವರ ಮುನಿಪನೀಕ್ಷಿಸಿದನನಿಬರ
ಹರಸಿ ನಯನೀತಿಗಳ ಹೇಳಿದು
ಮರಳಿ ಬಿಜಯಂಗೈದು ಹೊಕ್ಕನು ಬದರಿಕಾಶ್ರಮವ ೬೭

ಹದಿನೇಳನೆಯ ಸಂಧಿ

ಸೂ. ಧಾಳಿಯಲಿ ಬಂದರಿಬಲದ ಹೆ
ಚ್ಚಾಳುತನವನು ಮುರಿದು ಸಂಧಿಯ
ಮೇಲೆ ಧರ್ಮಜ ಬಂದು ಹೊಕ್ಕನು ಹಸ್ತಿನಾಪುರವ

ಕೇಳು ಜನಮೇಜಯ ನೃಪತಿ ಪಾಂ
ಚಾಲಸುತೆಯ ವಿವಾಹವಾರ್ತೆಯ
ಕೇಳಿದರಲೈ ಕೌರವರು ಮರುಗಿದರು ಮರುಕೊಳಿಸಿ
ಆಳ ನೆರಹಿದನಖಿಳ ದಳ ದೆ
ಖ್ಖಾಳವನು ನೋಡಿದರು ಭೂಮಿಾ
ಪಾಲ ಸಂಕುಲ ಸಹಿತ ಬಂದರು ದ್ರುಪದ ಪುರಿಗಾಗಿ ೧

ಏನ ಹೇಳುವೆ ನಿನ್ನವರ ಜಯ
ಮಾನವನು ಮತ್ತೊಂದು ಪೈಕದ
ಮಾನಭಂಗಸ್ಥಿತಿಯನೆಲೆ ಜನಮೇಜಯಕ್ಷಿತಿಪ
ಭಾನುವಿನ ಮಂಜಿನ ಶಿಲೋಚ್ಚಯ
ಸಾನುವಿನ ವಜ್ರದ ತರಕ್ಷುವ
ಧೇನುವಿನ ಹೋರಟೆಯ ಹವಣದು ಭೂಪ ಕೇಳೆಂದ ೨

ಮುರಿದುದಾ ಹೆಬ್ಬಲ ವಿಘಾತಿಯ
ಲೊರಗಿದರು ಪಟುಭಟರು ಗಜ ಹಯ
ದೊರತೆ ಬತ್ತಿತು ಭೀಮ ಪಾರ್ಥರ ಶರ ನಿದಾಘದಲಿ
ಉರುಕುಗೊಂಡರು ನಿಚ್ಚಟರು ಕೈ
ಮರೆದುದಾಚೆಯ ದೊರೆಗಳಿವದಿರು
ನೆರೆ ವಿಭಾಡಿಸೆ ತೆಗೆದು ಹಾಯ್ದರು ಹಸ್ತಿನಾಪುರಕೆ ೩

ಬಳಿಕ ಪಾಂಚಾಲಕನ ಭೀತಿಯ
ಮೊಳಕೆಯುರಿದುದು ಹರಿದುದುತ್ಸವ
ಜಲಧಿ ವಳಯದ ಭೂತಳಾಗ್ರದ ಭೂತಳೇಂದ್ರರಲಿ
ಹೊಳೆಹೊಳೆವ ರವಿ ರಶ್ಮಿಗಳ್ಪ
ಜ್ವಲಿಸುವಂತಿರೆ ಪಾಂಡುನಂದನ
ರಳವಿನುಬ್ಬಟೆ ಬಿಸಿಲು ನೆರೆ ಪಸರಿಸಿತು ದೆಸೆದೆಸೆಗೆ ೪

ಬಂದನಲ್ಲಿಗೆ ಸಕಲ ಯಾದವ
ವೃಂದ ಸಹಿತ ಮುರಾರಿ ಕುಂತೀ
ನಂದನರು ಬರಲಿದಿರುಗಾಣಿಸಿಕೊಂಡನುಚಿತದಲಿ
ತಂದ ಬಹುವಿಧ ವಸ್ತು ಕಾರವ
ನಂದು ಕೊಟ್ಟನು ಗಜ ರಥಾಶ್ವವ
ನಿಂದುವದನೆಯರಿಗೆ ವಿಚಿತ್ರಾಂಬರ ವಿಭೂಷಣವ ೫

ಮಗನೆ ಧರ್ಮಜ ಕೇಳು ಭೀಮಾ
ದಿಗಳೆ ಹರಿಯೆಮ್ಮಣ್ಣ ದೇವನ
ಮಗನು ಸೋದರ ಮಾವನೀತನು ನಿಮಗೆ ವಸುದೇವ
ವಿಗಡರೀ ಯಾದವ ನೃಪರು ಬಂ
ಧುಗಳು ನಿಮಗೆಂದೈವರನು ಕೈ
ನೆಗಹಿ ಕಮಲೋದರನ ಕೈಯಲಿ ಕೊಟ್ಟಳಾ ಕುಂತಿ ೬

ವನದೊಳಪಗತನಾದನಿವರ
ಯ್ಯನು ಕುಮಾರರ ಬಾಲ್ಯಕಾಲದೊ
ಳೆನಗೆ ರಕ್ಷಾಭಾರ ಬಿದ್ದುದು ಪತಿ ಪರೋಕ್ಷದಲಿ
ಇನಿಬರನು ಗಜಪುರಿಗೆ ಕೊಂಡೊ
ಯ್ದೆನು ಸುಯೋಧನನಿಂದ ವೈರವು
ಜನಿತವಾಯಿತು ಬಳಿಕ ಲಾಕ್ಷಾಭವನ ದಹನದಲಿ ೭

ಉರಿಯೊಳುಳಿದೆವು ನಿಮ್ಮ ಚರಣ
ಸ್ಮರಣ ಬಲದಲಿ ಬಹಳ ವಿಪಿನಾಂ
ತರದೊಳಗೆ ತೊಳಲಿದೆವು ಹೊರೆದೆವು ಸಾಯದೊಡಲುಗಳ
ಬರಬರಲು ತತ್ಸರ್ವ ದುಃಖೋ
ತ್ತರ ನಿವಾರಣ ದ್ರುಪದಕನ್ಯಾ
ವರಣ ನಿನ್ನೀಯಂಘ್ರಿ ದರುಶನವೆಂದಳಾ ಕುಂತಿ ೮

ದೇವಿ ಚಿತ್ತವಿಸೋಪಚಾರಕ
ಭಾವವೇ ಧರ್ಮಜನು ಭೀಮನು
ಭಾವನವರು ಧನಂಜಯಾದಿಗಳೆಮಗೆ ಮೈದುನರು
ಈವುಪಾಧಿ ಸ್ಥಳದೊಳಂತ
ರ್ಜೀವನ ಪ್ರಾಣಾದಿ ವಾಯುಗ
ಳಾವು ನಿಮ್ಮೈವರಿಗೆ ಕಾರಣವೆಂದನಸುರಾರಿ ೯

ದ್ರುಪದ ಗುಡಿಗಟ್ಟಿದನು ಕುಂತಿಯು
ವಿಪುಳ ಹರುಷವನೇನನೆಂಬೆನು
ದ್ರುಪದ ಯದು ಪರಿವಾರವುಲಿದುದು ಜಲಧಿ ಘೋಷದಲಿ
ಅಪದೆಸೆಯ ಮುಗಿಲೊಡೆದು ಹೊಳೆಹೊಳೆ
ದುಪರಿಚರ ರವಿಯಂತೆ ತತ್‌ಕ್ಷಣ
ವಿಪುಳ ತೇಜಃಪುಂಜರೆಸೆದರು ಪಾಂಡುನಂದನರು ೧೦

ಇದಿರೊಳವನಿಪ ಭೀಮನೆಡವಂ
ಕದಲಿ ಮಾದ್ರೀಸುತರು ಬಲವಂ
ಕದಲಿ ದೇವಕಿ ಕುಂತಿ ವಸುದೇವಾದಿ ಯದು ನಿಕರ
ಮುದದಿಯೈವರ ರಮಣಿ ಬಲವಂ
ಕದಲಿ ಕರುಣಾಳುವಿನ ವಾಮಾಂ
ಕದಲಿ ಫಲುಗುಣನೊಪ್ಪೆ ಮೆರೆದನು ದಾನವಧ್ವಂಸಿ ೧೧

ಆವುದೋ ಧರ್ಮಜನ ಭೀಮನ
ಭಾವಶುದ್ಧಿ ಧನಂಜಯನ ಸಂಕ್ಯ
ತಾವಲಂಬನ ಸಾರವೆಂತುಟೊ ಶಿವ ಮಹಾದೇವ
ತಾವುಗಾಣವು ವೇದವುಪನಿಷ
ದಾವಳಿಗಳೋಲೈಸಿ ಕೃಷ್ಣ ಕೃ
ಪಾ ವಿಲಾಸವ ನೋಡಿಯೆಂದುದು ಸಕಲ ಸುರನಿಕರ ೧೨

ಅರಸ ಚಿತ್ತೈಸಂದಿನೋಲಗ
ಹರಿದುದಾ ಹರಿಸೇನೆ ಬಿಟ್ಟುದು
ಪುರದ ಬಹಿರುದ್ಯಾನ ವೀಧಿಗಳೊಳಗೆ ಹರಹಿನಲಿ
ಕುರುನೃಪಾಲನ ಗುಪ್ತಚಾರರು
ಅರಿದರೀ ವಾರ್ತೆಯನು ಪುರದಲಿ
ಹರಹಿದರು ನೆರೆ ಕೇಳಿದನು ಧೃತರಾಷ್ಟ್ರನೀ ಹದನ ೧೩

ಕರೆಸಿದನು ಗಾಂಗೇಯ ಗೌತಮ
ಗುರು ಸುಯೋಧನ ಶಲ್ಯ ಸೈಂಧವ
ಗುರುತನುಜ ರಾಧೇಯ ವಿದುರ ಕಳಿಂಗ ಸೌಬಲರ
ಚರಮುಖ ಪ್ರತಿಪನ್ನ ಬಂಧುರ
ತರ ವಚೋವಿನ್ಯಾಸ ಕರ್ಣ
ಜ್ವರವೊ ಕರ್ಣಾಮೃತವೊ ಕೇಳಿರೆಯೆಂದನಂಧನೃಪ ೧೪

ಕೇಳಿರೈ ಹೇಳುವೆನು ಯಾದವ
ರಾಳು ಬಂದುದು ಗಡ ಜನಾರ್ದನ
ಕೋಳುವೋದನು ಗಡ ಯುಧಿಷ್ಠಿರ ಭೀಮ ಪಾರ್ಥರಿಗೆ
ಗಾಳಿ ಬೆಂಬಲವಾಗಲುರಿಯ ಛ
ಡಾಳವನು ನಿರ್ನೈಸಬಹುದೆ ವಿ
ತಾಳಿಸಿತಲೈ ನಿಮ್ಮ ಗಾರುಡವೆಂದನಾ ನೃಪತಿ ೧೫

ಎನಲು ಘರ್ಜಿಸುತರಸ ಮುರರಿಪು
ಜಿನುಗಿದರೆ ಗಿರಿ ಜರಿವುದೇ ಯಮ
ತನಜ ಭೀಮಾರ್ಜುನರು ಹಿಡಿದರೆ ಗಗನವಡಗುವುದೆ
ದನುಜರಿಪುವಿನೊಳೇನಹುದು ಬರ
ಲನಿಮಿಷರು ನೆರವಾಗಿ ರಣದಲಿ
ಜನಪ ನೋಡೆಂದರು ಜಯದ್ರಥ ಸೌಬಲಾದಿಗಳು ೧೬

ಕೊರತೆಯಲ್ಲಿದು ನಿನ್ನೆ ನಾವ್ಕಂ
ಡರಿದೆವಿವರತಿಬಲರು ಕೃಷ್ಣನ
ಬರಿ ಸಹಾಯದಲೇನು ಭೀಮಾರ್ಜುನರ ಬಲುಹೇನು
ನೆರವಣಿಗೆಯುಳ್ಳವರಲೈ ಹೊ
ಕ್ಕಿರಿದ ರಣ ಹಸಿಯಾರಿತೇ ನೀ
ವರಿಯಿರೇ ಭೂಪಾಲಯೆಂದನು ನಗುತ ಗಾಂಗೇಯ ೧೭

ಇವರ ಬಲುಹಂತಿರಲಿ ಸಾಕಿ
ನ್ನವರ ಕರೆಸು ವಿರೋಧ ಬಂಧ
ವ್ಯವಹೃತಿಗೆ ಫಲವಿಲ್ಲ ಮೂಲಚ್ಛೇದ ಕರ್ಮವಿದು
ಅವರು ಮುನ್ನತಿಬಲರು ಕೃಷ್ಣನ
ಹವಣ ನೀನೇ ಬಲ್ಲೆಯಿನ್ನೀ
ಸವಡಿಮಾರಿಯ ಸೋಕು ಲೇಸಲ್ಲೆಂದನಾ ಭೀಷ್ಮ ೧೮

ಕರೆಸು ವಿದುರನ ಕಳುಹಿ ವಾರಣ
ಪುರದ ರಾಜ್ಯ ವಿಭಾಗವನು ವಿ
ಸ್ತರಿಸಿ ಕೊಡು ಭಂಡಾರವನು ದಾಯಾದ ಮಾರ್ಗದಲಿ
ನರ ಯುಧಿಷ್ಠಿರ ಭೀಮರನು ನೀ
ಬರಿಸು ನಿಮ್ಮವಗುಣವ ನೋಡದೆ
ಬೆರಸಿ ಕೊಡುವೆವು ಕೂಡಿ ಬದುಕುವುದೆಂದನಾ ಭೀಷ್ಮ ೧೯

ಕರೆಸಿ ಕೊಡಿರೈ ನಿಮ್ಮ ಚಿತ್ತಕೆ
ಬರಿಸಿ ನಡಸುವೆನೆನ್ನ ಮಕ್ಕಳ
ದುರುಳತನದಿಂದಾದ ಹಿಂದಣ ಮಕ್ಕಳಾಟಿಕೆಯ
ಮರೆದು ಕಳೆಯಲಿ ಪಾಂಡುನಂದನ
ರೆರವಿಗರೆ ಬಾ ವಿದುರ ಭೀಷ್ಮನ
ಪರಮ ಮತವೇ ನನ್ನ ಮತ ಹೋಗೆಂದ ಧೃತರಾಷ್ಟ್ರ ೨೦

ಕಳುಹಿದರು ವಿದುರನನು ಬುದ್ಧಿಯ
ಗಲಿಸಿ ಭೀಷ್ಮಾದಿಗಳು ಪಯಣದ
ಲಲಿತ ಸನ್ನಾಹದೊಳು ಪರುಠವಿಸಿದನು ಪಾವುಡವ
ಬಳಿಕ ಸುಮುಹೂರ್ತದಲಿ ವಿಪ್ರಾ
ವಳಿಗಳಾಶೀರ್ವಾದದಲಿ ಮಂ
ಗಳತೆ ಮಿಗಿಲೊಲವಿಂದ ಹಸ್ತಿನಪುರವ ಹೊರವಂಟ ೨೧

ಕೇಳು ಭೂಪತಿ ಹಲವು ಪಯಣದ
ಮೇಲೆ ಪಯಣದಲೈದಿದನು ಪಾಂ
ಚಾಲಪುರವನು ಬಂದನರಮನೆಗಧಿಕ ಹರ್ಷದಲಿ
ಕೇಳಿದರು ಕೌಂತೇಯರೀತನ
ಲಾಲಿಸಿದರಿದಿರೈದಿ ತನು ಪುಳ
ಕಾಳಿಯಲಿ ಮೈ ಮುಳುಗೆ ತೆಗೆದಪ್ಪಿದರು ತಮತಮಗೆ ೨೨

ಕ್ಷೇಮವನು ಕುಶಲವನು ಬಂಧು
ಸ್ತೋಮದಲಿ ಕೇಳಿದರು ತಮ್ಮ
ಕ್ಷೇಮ ಕುಶಲವ ಹೇಳಿದರು ಪೂರ್ವಾಪರಸ್ಥಿತಿಯ
ಭೂಮಿಪತಿ ಚಿತ್ತೈಸು ಬಳಿಕಿನ
ರಾಮಣೀಯಕ ಯಾದವೇಂದ್ರ ಶಿ
ರೋಮಣಿಯ ಸಂಮ್ಮೇಳವನು ಹೇಳಿದನು ವಿದುರಂಗೆ ೨೩

ತಂದ ಪಾವುಡವನಿತುವನು ಯಮ
ನಂದನಂಗೊಪ್ಪಿಸಿದ ದ್ರುಪದ ಮು
ಕುಂದ ಧೃಷ್ಟದ್ಯುಮ್ನ ಕಂದರ್ಪಾನಿರುದ್ಧರಿಗೆ
ತಂದ ವಸ್ತುವನಿತ್ತವನು ಸಾ
ನಂದದಲಿ ನೀಡಿದನು ನಗುತರ
ವಿಂದನಾಭನ ಪದಕೆ ಮೈಯಿಕ್ಕಿದನು ಭಕ್ತಿಯಲಿ ೨೪

ತೆಗೆದು ತಕ್ಕೈಸಿದನು ಭೀಷ್ಮಾ
ದಿಗಳ ಕುಶಲವ ಕೇಳಿದನು ನಸು
ನಗುತ ಮೈದಡವಿದನು ವಿದುರನನಾ ಕೃಪಾಜಲಧಿ
ವಿಗಡನಾ ಧೃತರಾಷ್ಟ್ರನೀ ಬಂ
ಧುಗಳ ನೆನೆವನೆ ಪಾಂಡುಸುತರಿಗೆ
ಸೊಗಸುವನೆ ನೀ ಬಂದೆ ಲೇಸಾಯ್ತೆಂದನಸುರಾರಿ ೨೫

ಕಳುಹಿದನು ಬೀಡಾರಕಾತನ
ಬಳಿಯ ಪರಿವಾರವನು ಮನ್ನಿಸಿ
ಬಳಿಕ ಮರುದಿನ ಮೇಳವಿಸಿದರು ಮಂತ್ರಶಾಲೆಯಲಿ
ತಿಳಿಹಿದನು ಧೃತರಾಷ್ಟ್ರ ಭೀಷ್ಮರ
ಲಲಿತ ಮತವನು ಬಂಧುವರ್ಗ
ಸ್ಖಲಿತವನು ಸೈರಿಸುವುದೆಂದನು ವಿನಯದಲಿ ವಿದುರ ೨೬

ಕರೆಸಿದನು ಧೃತರಾಷ್ಟ್ರನಾತನ
ಚರಣವನು ಕಾಂಬುದು ನದೀಸುತ
ಗುರು ಕೃಪರು ನಿಮಗೊಳ್ಳಿದರು ನೀವಖಿಳ ರಾಜ್ಯದಲಿ
ಸರಿಯಕೊಂಬುದು ಸೇರುವಡೆ ಗಜ
ಪುರದೊಳಿಹುದಲ್ಲದೊಡೆ ನಿಮ್ಮಯ
ಪುರದಲಿರಿ ನೀವಾತ್ಮನಿರ್ಮಿತ ರಾಜಧಾನಿಯಲಿ ೨೭

ಮುರಹರನನಹುದೆನಿಸಿ ಭೂಮೀ
ಶ್ವರನ ಮೆಚ್ಚಿಸಿ ಭೀಮನನು ಮನ
ಬರಿಸಿ ಪಾರ್ಥನನೊಲಿಸಿ ಮಾದ್ರೀಸುತರನೊಡಬಡಿಸಿ
ಅರಸಿಗಭಿಮತವೆನಿಸಿ ಪಾಂಚಾ
ಲರಿಗೆ ಕಾರ್ಯವಿದೆನಿಸಿ ಕುಂತಿಗೆ
ಪರಮಹರುಷವ ರಚಿಸಿ ನುಡಿದನು ಸಂಧಿಯನು ವಿದುರ ೨೮

ಕದಡು ತಿಳಿದುದು ಕಾರ್ಯಗತಿಗಾ
ಸ್ಪದವ ಕೊಟ್ಟರು ಬಳಿಕ ಸುಮುಹೂ
ರ್ತದಲಿ ಪಯಣವ ಮಾಡಿದರು ಪಾಂಚಾಲ ದಳ ಸಹಿತ
ಯದುಶಿರೋಮಣಿವೆರಸಿ ಬಹು ಪಯ
ಣದಲಿ ಬಂದರು ಮೇಲೆ ಕೌರವ
ರಿದಿರುಗೊಂಡರು ಕೂಡೆ ಹೊಕ್ಕರು ಹಸ್ತಿನಾಪುರವ ೨೯

ಬಂದು ಕಾಣಿಕೆಗೊಟ್ಟು ಗಂಗಾ
ನಂದನ ಧೃತರಾಷ್ಟ್ರನನು ಸಾ
ನಂದದಲಿ ಗಾಂಧಾರಿಯನು ಗುರು ಗೌತಮಾದಿಗಳ
ವಂದಿಸಿದರಿವರೈವರವರಾ
ನಂದಜಲ ಪರಿಲುಳಿತ ನಯನಾ
ಸ್ಪಂದ ಪರಿತೋಷದಲಿ ತೆಗೆದಪ್ಪಿದರು ಪಾಂಡವರ ೩೦

ಕರೆಸಿ ತನ್ನ ಕುಮಾರಕರ ನೂ
ರ್ವರನು ಕಾಣಿಸಿದನು ಪರಸ್ಪರ
ಪರಮ ಸಂಪ್ರೀತಿಗಳ ನಿಬಿಡಾಲಿಂಗನೋತ್ಸವದ
ದರುಶನೋಚಿತ ಮಾನ್ಯಮಾನ
ಸ್ಫುರಣದಲಿ ವಿಸ್ತರಿಸಿ ಸೈಂಧವ
ಗುರುತನುಜ ರಾಧೇಯ ಸೌಬಲರಪ್ಪಿದರು ನೃಪನ ೩೧

ಯಾದವರು ಪಾಂಚಾಲರಲಿ ಸಂ
ಪಾದಿಸಿದುದನ್ಯೋನ್ಯ ಘನ ಸಂ
ವಾದ ಸುಖ ಸಂಪ್ರೀತಿ ಮೆರೆಯಲ್ಕಿಪ್ಪ ಸತ್ಕಾರ
ಆದುದುತ್ಸವ ಜನಜನಿತ ಹರು
ಷೋದಧಿಯ ಹೊನಲಿನಲಿ ಹಿಂದಣ
ಭೇದ ಕರ್ದಮವಡಗಿಹೋಯ್ತುವನೀಶ ಕೇಳೆಂದ ೩೨

ವೀತ ಭಯರನ್ಯೋನ್ಯ ಪರಮ
ಪ್ರೀತಿಗಳ ಬೆಳವಿಗೆಯಲಿದ್ದರು
ಭೂತಳಾಧಿಪರೈದು ಸಂವತ್ಸರಗಳೊಂದಾಗಿ
ಖ್ಯಾತವಿದು ಪಾಂಚಾಲಪುರದೊಳ
ತೀತವಾಯಿತ್ತೊಂದು ವರುಷವ
ಭೀತ ಧರ್ಮಸುತಂಗೆ ಮುವ್ವತ್ತಾರು ಸಮವಾಯ್ತು ೩೩

ಹದಿನೆಂಟನೆಯ ಸಂಧಿ

ಸೂ. ದಾಯ ಭಾಗದೊಳಖಿಳ ರಾಜ್ಯ
ಶ್ರೀಯ ಹಸುಗೆಯ ಕೊಂಡು ಪಾಂಡವ
ರಾಯರೊಪ್ಪಿದರಿಂದ್ರನಿರ್ಮಿತ ರಾಜಧಾನಿಯಲಿ

ಕೇಳು ಜನಮೇಜಯ ಧರಿತ್ರೀ
ಪಾಲ ನಿಮ್ಮಯ ಪೂರ್ವಜರು ಸಮ
ಪಾಳಿಗಳ ಸೇರುವೆಯೊಳಿದ್ದರು ಸಾನುರಾಗದಲಿ
ಖೇಳಮೇಳದ ಬೇಟೆಗಳ ವೈ
ಹಾಳಿಗಳ ಜೂಜಿನ ಸಮಂಜಸ
ಲೀಲೆಗಳ ಕೇಳಿಯಲಿ ಕಳೆದರು ವರುಷ ಪಂಚಕವ ೧

ಕರೆಸಿದನು ಧೃತರಾಷ್ಟ್ರ ಭೂಪತಿ
ಮುರಹರನ ದ್ರುಪದನ ಯುಧಿಷ್ಠಿರ
ನರ ವೃಕೋದರ ಭೀಷ್ಮ ಗುರು ಕೃಪ ಕರ್ಣ ಶಕುನಿಗಳ
ಎರಡು ಭಾಗವ ಮಾಡಿ ವಿಶ್ವಂ
ಭರೆಯ ರಾಜ್ಯವನುಭಯ ರಾಯರು
ಹೊರೆ ಹೊಗದೆ ಪಾಲಿಸಲಿ ಪಂಥದೊಳೆಂದನಂಧ ನೃಪ ೨

ಅಹುದು ಹೊಲ್ಲೆಹವಲ್ಲ ಖುಲ್ಲರ
ಕುಹಕ ಕೊಳ್ಳದು ಬೇರೆ ರಾಜ್ಯದೊ
ಳಿಹರೆ ಸೇರುವೆ ದೃಢವಹುದು ದಾಯಾದ ಮಾರ್ಗದಲಿ
ಗಹನವೇಕಾಮಿಷ ಸಮುದ್ಭವ
ದಹಿತತನದುತ್ತರಣವತಿ ದು
ಸ್ಸಹವಲೇ ನೀ ನೆನೆದ ಹದ ಲೇಸೆಂದನಾ ಭೀಷ್ಮ ೩

ಅರಸ ಕೇಳೈ ಸಕಲ ರಾಜ್ಯವ
ನೆರಡು ಭಾಗವ ಮಾಡಿ ಪೂರ್ವೋ
ತ್ತರದ ದಕ್ಷಿಣ ಪಶ್ಚಿಮಂಗಳ ಹೆಚ್ಚು ಕುಂದುಗಳ
ಪುರನಗರ ಖರ್ವಟ ಮಡಂಬ
ಸ್ಫುರಿತ ಖೇಟಗ್ರಾಮವೆಂಬವ
ನೆರಡು ಭಾಗವ ಮಾಡಿದರು ಕೂಡಿದರು ಸಮವಾಗಿ ೪

ಪುರ ಸುರೇಂದ್ರ ಪ್ರಸ್ಥವರಸಂ
ಗಿರವು ಧರ್ಮಸುತಂಗೆ ಹಸ್ತಿನ
ಪುರ ಸುಯೋಧನಗುಭಯರಾಯರ ರಾಜಧಾನಿಗಳು
ಚರಮ ದಕ್ಷಿಣವಾಗಿ ಪೂರ್ವೋ
ತ್ತರ ವಿಲಂಬಿತವಾಗಿ ಹಿಮ ಸಾ
ಗರದ ಮಧ್ಯದ ಭೂಮಿಯನು ಸೇರಿಸಿದರೆರಡಾಗಿ ೫

ವಾರಣ ಪ್ರತತಿಯನಘಾಟದ
ವಾರುವಂಗಳ ಮಣಿಮಯದ ಹೊಂ
ದೇರುಗಳನಾಭರಣವನು ತೆಗೆಸಿದರು ಸಮವಾಗಿ
ಕೌರವರು ಪಾಂಡವರುಗಳ ಮನ
ದೋರೆ ಪೋರೆಯ ತಿಳುಹಿ ವೈರ ವಿ
ಕಾರವನು ಬಿಡಿಸಿದರು ಭೀಷ್ಮಾದಿಗಳು ಹರುಷದಲಿ ೬

ಬಳಿಕ ಸುಮುಹೂರ್ತದಲಿ ಹೊರ ಗುಡಿ
ಬಳಸಿ ಹೊಯಿದವು ರಾಣಿವಾಸದ
ನಿಳಯನಿಳಯದ ತಳಿಗೆದಂಬುಲ ಮಂಗಳಾರ್ತಿಗಳ
ಫಲಸಮೂಹದ ಕಾಣಿಕೆಯ ಕೈ
ಗೊಳುತ ಗಾಂಧಾರಿಗೆ ಮಹೀಶನ
ಲಲನೆಯರಿಗಭಿನಮಿಸಿ ಕಳುಹಿಸಿಕೊಂಡರುಚಿತದಲಿ ೭

ಕಳುಹಲೈತಂದಂಧ ನೃಪತಿಯು
ನಿಲಿಸಿದರು ನಿಳಯದಲಿ ಕೌರವ
ಕುಲದ ನೂರ್ವರ ಕರ್ಣ ಶಕುನಿ ಜಯದ್ರಥಾದಿಗಳ
ನಿಲಿಸಿದರು ಗಜಪುರದ ಯೋಜನ
ದಳತೆಯಲಿ ಗುರು ಭೀಷ್ಮವಿದುರರು
ಕೆಲವು ಪಯಣವ ಬಂದು ಕಳುಹಿಸಿಕೊಂಡರುಚಿತದಲಿ ೮

ಭೂಮಿ ಲಂಬದ ನೃಪರ ಬಲದು
ದ್ದಾಮ ವಿಭವದೊಳಸುರರಿಪು ಸಹಿ
ತೀ ಮಹೀಪಾಲಕರು ಬಂದರು ಹಲವು ಪಯಣದಲಿ
ರಾಮಣೀಯಕ ರಚನೆಯಲಿ ಸು
ತ್ರಾಮ ನಗರಿಯ ಸೂತ್ರಧಾರೆಯ
ಲಾ ಮನೋಹರ ವಿಶ್ವಕರ್ಮ ವಿನಿರ್ಮಿತದ ಪುರಕೆ ೯

ಧರಣಿಪತಿ ಚಿತ್ರೈಸಿಲಾವೃತ
ವರುಷ ಮಧ್ಯದ ಹೇಮಗಿರಿಯವೊ
ಲರಮನೆಯ ಸಿರಿ ಸೋಲಿಸಿತು ಸುರರಾಜ ವೈಭವವ
ಹರಿಯ ವೀಧಿಯ ಸೋಮವೀಧಿಯ
ಮುರಿವುಗಳ ಕೇರಿಗಳ ನೆಲೆಯು
ಪ್ಪರಿಗೆಗಳ ಹೊಂಗೆಲಸದಲಿ ಹೊಳೆಹೊಳೆದುದಾ ನಗರ ೧೦

ಹೇಮ ನಿರ್ಮಿತ ದೇವಸದನ
ಸ್ತೋಮದಲಿ ಮಣಿಮಯದ ಫಣಿಪನ
ಹೇಮ ವಿಧಿಯಲಿ ವಿವಿಧ ರತ್ನಾವಳಿಯ ಹಸರದಲಿ
ಕಾಮರಿಪುವಿಂಗೊರೆಯ ಕಟ್ಟುವ
ವಾಮಲೋಚನೆಯರ ವಿಲಾಸದ
ಲಾ ಮಹಾಪುರವೆಸೆದುದಿಂದ್ರಪ್ರಸ್ಥ ನಾಮದಲಿ ೧೧

ವಿತತ ವಿಭವದಲಿಂದ್ರನಮರಾ
ವತಿಯ ಹೊಗುವಂದದಲಿ ದ್ರುಪದಾ
ಚ್ಯುತರು ಸಹಿತವನೀಶ ಹೊಕ್ಕನು ರಾಜಮಂದಿರವ
ಕೃತಯುಗದೊಳಾ ತ್ರೇತೆಯಲಿ ಭೂ
ಪತಿಗಳಾದರನಂತ ಕುಂತೀ
ಸುತರ ಸಿರಿಗೆಣೆಯಾದುದಿಲ್ಲವನೀಶ ಕೇಳೆಂದ ೧೨

ಬಂದು ಕಂಡುದು ಸಕಲ ಪುರಜನ
ವಂದು ಕಾಣಿಕೆಯಿತ್ತು ಸುಭಟರ
ಸಂದಣಿಯು ಗಜ ಹಯ ರಥದ ಪದಧೂತ ಧೂಳಿಯಲಿ
ಮಂದಿರದ ಬಾಗಿಲ ಗತಾಗತ
ವೃಂದದೊತ್ತೊತ್ತೆಯಲಿ ಪುರಜನ
ನಿಂದುದಲ್ಲಿಯುವಲ್ಲಿ ಪಡೆಯದೆ ರಾಜದರ್ಶನವ ೧೩

ಅತಿಶಯವನೇನೆಂಬೆನಮರಾ
ವತಿಯ ಭೋಗಾವತಿಯ ಮಧ್ಯ
ಸ್ಥಿತದ ನಾಯಕ ರತುನದಂತಿರೆ ಮೆರೆದುದಾ ನಗರ
ಸತತವೀ ಪರಿ ವಿಭವವೀ ಜನ
ವಿತತಿಗಳ ಸನ್ಮಾರ್ಗದಲಿ ಸಂ
ಗತಿಗಳೀ ವಿಸ್ತಾರವೀ ಪರಿ ಭೂಪ ಕೇಳೆಂದ ೧೪

ದ್ರುಪದ ಧೃಷ್ಟದ್ಯುಮ್ನ ಮೊದಲಾ
ದಪರಿಮಿತ ಬಾಂಧವ ನಿಕಾಯವ
ನುಪಚರಿಸಿ ಕಳುಹಿದನು ಭೂಪತಿ ಪಂಚ ಕೈಕೆಯರ
ವಿಪುಳ ಕಾರುಣ್ಯದಲಿ ಪಾಂಡವ
ನೃಪ ಜನವ ಸಂತೈಸಿ ದಾನವ
ರಿಪು ನಿಜಾವಾಸಕ್ಕೆ ಬಿಜಯಂಗೈಯಲನುವಾದ ೧೫

ಕರೆಸಿ ಕುಂತಿಯ ದ್ರೌಪದಿಯರನು
ಕರಣ ವಚನಾಮೃತದ ರಸದಲಿ
ಹೊರೆದು ಕೃತ ದಾಯಾದ ವಿಷಮ ವಿರೋಧವರ್ತನವ
ಅರುಹಿ ಸುಯ್ಧಾನದ ಸಮಾಹಿತ
ತರದ ಬುದ್ಧಿಯಗಲಿಸಿ ಯಾದವ
ರರಸ ಬಿಜಯಂಗೈದನಾ ದ್ವಾರಕಿಗೆ ಹರುಷದಲಿ ೧೬

ಕಳುಹಿದನು ಪಾಂಚಾಲರನು ಯದು
ತಿಲಕ ಮೊದಲಾದಖಿಳ ಬಾಂಧವ
ಕುಲವನುತ್ಸಾಹದಲಿ ಹೊರೆದನು ನಾಡು ಬೀಡುಗಳ
ಬೆಳುಗವತೆಯನ್ಯಾಯವಾರಡಿ
ಕಳವು ದಳವುಳ ಬಂದಿ ಡಾವರ
ಕೊಲೆ ಹುಸಿಗಳಿಲ್ಲಿವರ ರಾಜ್ಯದೊಳರಸ ಕೇಳೆಂದ ೧೭

ಯಾಗವಹ್ನಿಯ ಧೂಮದಲಿ ದಿಗು
ಭಾಗ ವಿವರಣವಡಗಿತು ಹವಿ
ರ್ಭಾಗ ಭೋಜನದಿಂದಲಾದುದಜೀರ್ಣವಮರರಿಗೆ
ಯಾಗ ದಕ್ಷಿಣೆಗಳಲಿ ಬಹಳ
ತ್ಯಾಗ ದಾನಕೆ ಲಟಕಟಿಸಿ ತಾ
ವಾಗಿ ಕೈಯಾನರು ಯುಧಿಷ್ಠಿರನೃಪನ ರಾಜ್ಯದಲಿ ೧೮

ಬಲಿಯ ನಹುಷನ ದುಂದುಮಾರನ
ನಳನ ಸಗರನ ನೃಗನ ಶಾಕುಂ
ತಳನ ಪುರು ಕುತ್ಸನ ಹರಿಶ್ಚಂದ್ರನ ಪುರೂರವನ
ಇಳೆಯ ವಲ್ಲಭರೆನಿಪ ರಾಜಾ
ವಳಿಯ ಮನವೆಚ್ಚುಗಳನುರ್ವೀ
ಲಲನೆ ಮರೆದಳು ಮೆರೆದಳಾ ಧರ್ಮಜನ ರಾಜ್ಯದಲಿ ೧೯

ಆದಿ ಯುಗದೊಳು ಧರ್ಮವಿದ್ದುದು
ಪಾದ ನಾಲ್ಕರ ಗಾಢಗತಿಯಲಿ
ಪಾದವೂಣೆಯವಾದುದಾ ತ್ರೇತಾ ಪ್ರಭಾವದಲಿ
ಪಾದವೆರಡಡಗಿದವು ದ್ವಾಪರ
ದಾದಿಯಲ್ಲಿ ಯುಧಿಷ್ಠಿರನ ರಾ
ಜ್ಯೋದಯದಲಂಕುರಿಸಿ ಸುಳಿದುದು ನಾಲ್ಕು ಪಾದದಲಿ ೨೦

ಅರಸ ಚಿತ್ತೈಸಾ ಯುಧಿಷ್ಠಿರ
ನರಪತಿಯ ರಾಜ್ಯಪ್ರಭಾವೋ
ತ್ಕರುಷ ವಿಸ್ತರವೇನನೆಂಬೆನು ಸಾಕದಂತಿರಲಿ
ಪರಮ ವಿಭವದೊಳೊಂದು ದಿನವೈ
ವರು ನಿಜಾಸ್ಥಾನದಲಿ ಹರಿ ವಿ
ಷ್ಟರದೊಳಿರ್ದರು ಕಂಡರತಿ ದೂರದಲಿ ನಾರದನ ೨೧

ಬಂದನಿವರೋಲಗಕೆ ಗಗನದಿ
ನಿಂದು ಮಂಡಲವಿಳಿವವೊಲ್ ನೃಪ
ವೃಂದವೆದ್ದಭಿನಮಿಸಿದುದು ಪದಯುಗಕೆ ಮುನಿಪತಿಯ
ಇಂದು ಧನ್ಯರು ನಾವಲಾ ಮುನಿ
ವಂದ್ಯ ದರ್ಶನವಾಯ್ತಪೂರ್ವವಿ
ದೆಂದು ಕುಂತೀ ತನುಜರಿದಿರೆದ್ದಂಘ್ರಿಗೆರಗಿದರು ೨೨

ಹರಸಿದನು ಮುನಿಯರ್ಘ್ಯಪಾದ್ಯೋ
ತ್ಕರವ ಮಧುಪರ್ಕಾಸನಾದಿಯ
ನರಸ ಮಾಡಿದನಮರಮುನಿ ಕೈಕೊಂಡು ಹರುಷದಲಿ
ಪರಿಮಿತದ ಸಮಯದ ವಚೋ ವಿ
ಸ್ತರಣವುಂಟೆನೆ ರಾಯನೋಲಗ
ಹರಿದುದವನೀಪಾಲ ಬಿನ್ನಹ ಮಾಡಿದನು ಮುನಿಗೆ ೨೩

ಏನು ಬಿಜಯಂಗೈದ ಹದನೆನ
ಗೇನನುಗ್ರಹ ವಚನ ನಿಮ್ಮಡಿ
ಗೇನನಾ ಬೆಸಗೈವುದೆನಗಾಜ್ಞಾಪಿಸುವುದೆನಲು
ನೀನಘಾಟದ ರಾಜಋಷಿ ನೀ
ಮಾನವನೆ ಧರ್ಮಸ್ವರೂಪನು
ನೀನು ಭವದಾಲೋಕನಾರ್ಥವು ನಮ್ಮ ಬರವೆಂದ ೨೪

ಅನುಜರನು ಹೇಳುವರೆ ಭೀಮಾ
ರ್ಜುನರು ವಧುವಾರೆಂಬರಮರಾಂ
ಗನೆಯರಿಗೆ ನೂರೆಂಟು ಮಡಿಯಿಾ ದ್ರೌಪದಾದೇವಿ
ಘನ ಸಹಾಯನು ಹವಣೆನವನೆಂ
ಬೆನೆ ಚತುರ್ದಶ ಭುವನಪತಿ ನೃಪ
ನಿನಗೆ ಪಾಡೇ ಪನ್ನಗೇಂದ್ರ ಸುರೇಂದ್ರರಿಂದಿನಲಿ ೨೫

ಆದಡೊಂದಿಹುದೈವರಿಗೆ ವಧು
ವಾದಳೀ ದ್ರೌಪದಿ ಮಹೇಶ್ವರ
ನಾದಿಯಲಿ ಕರುಣಿಸಿದ ವರದಲಿ ಪುಣ್ಯ ಕಥನವಿದು
ಮೇದಿನಿಯೊಳೇಕಾಮಿಷ ಸ್ಥಿತಿ
ಯಾದಿಯಿದು ವಿಗ್ರಹಕೆ ತಮ್ಮೊಳು
ಕಾದಿದರು ಸುಂದೋಪಸುಂದರು ಭೂಪ ಕೇಳೆಂದ ೨೬

ಅರಸುಗಳು ತಾವಿಬ್ಬರೇಕೋ
ದರರು ಬಲುಗೈಗಳು ಸುರಾಸುರ
ನರರೊಳಡುಪಾಯೆಯಲಿ ವೆಂಠಣಿಸಿದರು ಭೂತಳವ
ನೆರೆದು ಸುರರು ಸರೋಜ ಪೀಠಂ
ಗರುಹಿದರು ಬಳಿಕಾತನಿವರನು
ಪರಿಹರಿಸುವುದಕೇನುಪಾಯವೆನುತ್ತ ಚಿಂತಿಸಿದ ೨೭

ಬಳಿಕಸಂಖ್ಯಾತದ ಸುರೋರಗ
ಲಲನೆಯರಲಿ ತಿಲಾಂಶ ಮಾತ್ರದ
ಚೆಲುವಿಕೆಯನೇ ತೆಗೆದು ನಿರ್ಮಿಸಿದನು ವರಾಂಗನೆಯ
ಬೆಳಗಿತಾಕೆಯ ಹೆಸರು ದಿವಿಜಾ
ವಳಿಯೊಳೈದೆ ತಿಲೋತ್ತಮಾಹ್ವಯ
ದಳಿಕುಲಾಳಕಿಗಬುಜಭವ ನೇಮಿಸಿದನೀ ಹದನ ೨೮

ಅವರ ಕೆಡಿಸುವ ಹದನ ಕೈಕೊಂ
ಡದವನಿಗೈತಂದಳು ವಿನೋದದೊ
ಳಿವದಿರಿದ್ದರು ಬನದೊಳಗೆ ಮದಿರಾ ಮದೋದ್ಧತರು
ಯುವತಿಯನು ಕಂಡರು ಕಟಾಕ್ಷದ
ಸವಡಿಗೋಲಿಂದೊಡೆದುದೆದೆ ಹರಿ
ದವರು ಹಿಡಿದರು ವಾಮ ದಕ್ಷಿಣ ಕರಂಗಳಂಗನೆಯ ೨೯

ಎನಗೆ ವಧು ತಾ ಮುನ್ನ ಕಂಡೆನು
ತನಗೆ ಸತಿ ತಾ ಮುನ್ನ ಹಿಡಿದೆನು
ತನಗೆನಗೆ ನೀ ನಿಲ್ಲು ನೀ ನಿಲ್ಲೆನುತ ಹೊಯ್ದಾಡಿ
ಜನಪರಿಬ್ಬರು ಮಡಿಯಲಮರಾಂ
ಗನೆ ಮುಗುಳ್ನಗೆ ನಗುತಲಬುಜಾ
ಸನನ ಹೊರಗೈದಿದಳು ಕುಂತೀತನುಜ ಕೇಳೆಂದ ೩೦

ಅದರಿನೀ ಜೀವರಿಗೆ ದುಸ್ಥಿತಿ
ಸುದತಿಯರ ದೆಸೆಯಿಂದ ರಾಜ್ಯದ
ಹುದುವಿನಲಿ ಮೇಣರ್ಥಗತಿಯಲನರ್ಥ ತಪ್ಪದಲೆ
ಸುದತಿ ನಿಮ್ಮೈವರಿಗೆಯಿಾ ದ್ರೌ
ಪದಿ ಮಹಾಸತಿ ರಾಗ ಲೋಭದ
ಕದನದಲಿ ಕಾಳಾಗದಿದ್ದರೆ ತುದಿಗೆ ಲೇಸೆಂದ ೩೧

ಅರಸ ಚಿತ್ತೈಸೊಂದು ವತ್ಸರ
ವಿರಲಿ ನಿಮ್ಮೊಬ್ಬರಲಿ ಸತಿ ಮರು
ವರುಷಕೊಬ್ಬನೊಳಿಂತು ಪಂಚಕಕೈದು ವರುಷದಲಿ
ಅರಸಿಯನು ಪತಿಸಹಿತ ಮಂಚದೊ
ಳಿರಲು ಕಾಬುದು ಸಲ್ಲದದು ಗೋ
ಚರಿಸಿದಡೆ ಬಳಿಕದಕೆ ಪ್ರಾಯಶ್ಚಿತ್ತ ವಿಧಿಯುಂಟು ೩೨

ಆರು ಕಂಡರು ಆತನೊಬ್ಬನೆ
ಧಾರುಣಿಯಲಿ ಸುತೀರ್ಥ ಯಾತ್ರಾ
ಭಾರದಲಿ ತಿರುಗುವುದು ಸುತ್ತಲು ವರುಷವೊಂದರಲಿ
ಚಾರು ನಿಷ್ಕೃತಿಯೆನಲು ಮುದದಲಿ
ನಾರದರ ದಿವ್ಯೋಪದೇಶಕೆ
ಸಾರಹೃದಯ ಹಸಾದವೆಂದನು ತಮ್ಮದಿರು ಸಹಿತ ೩೩

ಮಂಗಳವು ನಿಮಗೆಂದು ಹಂಸೆಯ
ಬೆಂಗೆ ಹಾಯ್ದನು ಬಳಿಕ ನಭದೊಳ
ಭಂಗ ಮುನಿಯಡಗಿದನು ತಮ್ಮೊಳಗೆಂದರೀ ನೃಪರು
ಅಂಗನಾ ವಿಷಯದಲಿ ಸೀಮಾ
ಸಂಗತಿಯ ಸೇರಿಸಿದನೈ ಮುನಿ
ಪುಂಗವನ ಕರುಣದಲಿ ಗದುಗಿನ ವೀರ ನಾರಯಣ ೩೪

ಹತ್ತೊಂಬತ್ತನೆಯ ಸಂಧಿ

ಸೂ. ಆ ಸುರಾರಿ ವಿರೋಧಿ ಪುರದಲಿ
ವಾಸವಾತ್ಮಜ ಮದುವೆಯಾಗಿ ವಿ
ಲಾಸದಲಿ ಹೊಕ್ಕನು ಸುಭದ್ರಾ ಸಹಿತ ನಿಜಪುರವ

ಕೇಳು ಜನಮೇಜಯ ಧರಿತ್ರೀ
ಪಾಲ ನಾರದಮುನಿ ನರೇಂದ್ರನ
ಬೀಳುಕೊಂಡನು ಚಪಲಗತಿಯಲಿ ಚಿಗಿದನಂಬರಕೆ
ಮೇಲೆ ಬಳಿಕೊಂದವಗಡವನೇ
ವೇಳುವೆನು ಪಾರ್ಥಂಗೆ ಬಂದುದ
ಕಾಲಗತಿಯೈಸಲೆ ವಿದೇಶ ಭ್ರಮಣವಾಯ್ತೆಂದ ೧

ನರನ ವಳಿತದೊಳೊಂದು ಸಮಯದೊ
ಳಿರುಳು ತಸ್ಕರ ಬಾಧೆಯಲಿ ಭೂ
ಸುರರು ಬಾಯ್ಬಿಡುತ್ತೈದೆಯಿಂದ್ರಪ್ರಸ್ಥ ಪುರವರವ
ಮೊರೆಯಬಾಯ್ಗಳ ಹುಲ್ಲು ಕೈಗಳ
ಹರಿದ ಮೈಗಳ ಸೆಕೆಯ ಸುಯ್ಗಳ
ತರದ ಬೈಗಳ ಕಳವಳವ ಕೇಳಿದನು ಕಲಿಪಾರ್ಥ ೨

ಕರೆಸಿ ವಿಪ್ರರ ಬಾಧೆಗಳನಾ
ದರಿಸಿ ಕೇಳಿದು ಸಂತವಿಸಿ ಪರಿ
ಹರಿಸಿ ಕೊಡುವೆನು ದುಷ್ಟಪಾಟಚ್ಚರಪರಿಪ್ಲವವ
ಮರಳಿ ನೀವೆಂದವರ ಬೀಳ್ಕೊಂ
ಡರಿ ನಿವಾರಣ ಬಂದನಗ್ಗದ
ಶರಧನುವ ಕೊಳಲೆಂದು ರಾಯನ ಸೆಜ್ಜೆಯರಮನೆಗೆ ೩

ಸಮಯವೇನೆನೆ ಜೀಯ ರಾಯನು
ರಮಣಿಯೊಡನೇಕಾಂತವೆನಲ
ಸ್ತಮಿತ ಹರುಷನು ನಿಂದು ನೆನೆದನು ತನ್ನ ಮನದೊಳಗೆ
ಅಮರಮುನಿ ಮತವೊಂದು ಮಂಚದ
ರಮಣಿ ರಮಣರ ದರುಶನವಿದ
ಕ್ರಮವೆನಿಪುದೀ ವಚನ ಸಂಘಟಿಸಿತ್ತು ತನಗೆಂದ ೪

ಈಗಲೀ ವಿಪ್ರರಲಿ ಖಳರಭಿ
ಯೋಗವಾರ್ತಾಶ್ರವಣ ಬಹು ದುರಿ
ತಾಗಮವು ತನಗಾವುದೋ ಕರ್ತವ್ಯವೆಂದೆನುತ
ಈಗಲೀ ಸಂದಿಗ್ಧ ಸಮಯು
ತ್ಯಾಗ ಧರ್ಮ ವಿರೋಧ ಕೃತ್ಯವಿ
ಭಾಗವಾವುದೊ ಶಾಸ್ತ್ರದೃಷ್ಟಿಯೊಳೆಂದು ಚಿಂತಿಸಿದ ೫

ಎರಡು ಪಾತಕವಿವೆ ಬಲಾಬಲ
ವೆರಡರೊಳು ಸಾಮಾನ್ಯ ಪಕ್ಷಾಂ
ತರ ವಿಶೇಷವದಾವುದದರೊಳಗೆಂದು ಚಿತ್ತದಲಿ
ಒರೆದೊರೆದು ನೋಡಿದನು ತೂಕವ
ಬರೆಸಿ ಕಾಹಿನ ಕಂದುಕುಂದನು
ಪರಿಕಿಸುತ ನಿಶ್ಚೈಸಿ ತಿಳಿದನು ತನ್ನ ಮನದೊಳಗೆ ೬

ಅರಸನರಸಿಯರೊಂದು ಮಂಚದೊ
ಳಿರಲು ಕಂಡರೆ ಭೂಪ್ರದಕ್ಷಿಣ
ವರುಷವೊಂದರೊಳಿದಕೆ ಪ್ರಾಯಶ್ಚಿತ್ತ ವಿಧಿಯುಂಟು
ಧರಣಿಯಮರರುಪಪ್ಲವವ ಪರಿ
ಹರಿಸದಿರಲಾ ಪಾತಕಕೆ ಸಂ
ಹರಣವುಂಟೇ ಶಾಸ್ತ್ರದೃಷ್ಟಿಯೊಳೆಂದು ಚಿಂತಿಸಿದ ೭

ಎನುತ ನರನೊಳಹೊಕ್ಕು ತನ್ನಯ
ಧನು ಶರಂಗಳ ಕೊಂಡು ನುಡಿದನು
ಮುನಿವಚನ ಸಂಘಟಿತ ನೃಪದಂಪತಿ ವಿಲೋಕನದ
ಘನ ದುರಿತ ನಿಷ್ಕೃತಿಗೆ ವರುಷದೊ
ಳೆನಗೆ ದೇಶಭ್ರಮಣವಾಯ್ತೆಲೆ
ಜನಪ ಚಿಂತಿಸಬೇಡೆನುತ ಹೊರವಂಟನಾ ಪಾರ್ಥ ೮

ಇರಿದು ಕಳ್ಳರವಳ್ಳಿಗಳ ಕುರಿ
ದರಿದು ಭೂಸುರರೂರುಗಳ ಸೆರೆ
ತುರುಗಳನು ತಂದಿತ್ತನರ್ಜುನನಾ ಮಹೀಸುರರ
ತುರುಗಿದಾಶೀರ್ವಾದ ಮಳೆಗಳು
ಕರೆಯೆ ಹೆಚ್ಚಿದ ವೀರಕೀರ್ತಿಯ
ತೊರೆಗಳೊಳು ತೇಕಾಡುತಿರ್ದುದು ಸಕಲ ಜನನಿಕರ ೯

ಧಾರುಣೀಪತಿ ಕೇಳು ಗಂಗಾ
ತೀರಕೈದಿದನರ್ಜುನನು ಭಾ
ಗೀರಥೀ ಸ್ನಾನಾವಗಾಹ ವಿಶುದ್ಧ ವಿಗ್ರಹನ
ದೂರದಲಿ ಕಂಡುರಗ ರಾಜಕು
ಮಾರಿ ವರಿಸಿದಳೊಲವಿನಲಿ ಜಂ
ಭಾರಿತನಯುನನಿಳುಹಿದಳು ಪಾತಾಳ ಮಂದಿರಕೆ ೧೦

ವಿಭವದಲಿ ವಾಸುಕಿಯ ತಂಗಿಯ
ನುಭಯ ವಂಶ ವಿಶುದ್ಧೆಯನು ಹರಿ
ನಿಭನು ಪಾಣಿಗ್ರಹಣವನು ಮಾಡಿದನು ವೊಲವಿನಲಿ
ಅಭಿಮತ ಕ್ರೀಡಾವಿನೋದದ
ರಭಸದಲಿ ದಿನ ಸವೆಯೆ ಗರ್ಭ
ಪ್ರಭವವಾಯ್ತು ಕುಮಾರ ಜನಿಸಿದನುರಗ ನಾರಿಯಲಿ ೧೧

ಸುತನಿರಾವಾನೆನಿಸಿ ತೊಳಗಿದ
ನತಿ ಬಹಳ ಬಲನಾತನನು ನಿಜ
ಸತಿಯನಲ್ಲಿಯೆ ನಿಲಿಸಿ ಕಳುಹಿಸಿಕೊಂಡನುಚಿತದಲಿ
ಕ್ಷಿತಿಗೆ ಬಂದನು ಜಾಹ್ನವೀ ಸಂ
ಗತ ಸಮುದ್ರದ ತೀರದಲಿ ಸೇ
ವಿತ ಸಕಲ ತೀರ್ಥೌಘನೈದಿದನಿಂದ್ರ ದಿಙ್ಮುಖವ ೧೨

ಅರಸ ಕೇಳುತ್ತರದ ಪೂರ್ವದ
ಪರಮ ತೀರ್ಥವ್ರಾತವನು ವಿ
ಸ್ತರಿಸಿ ಸಾಗರ ತೀರದಲಿ ದಕ್ಷಿಣ ದಿಶಾವರಕೆ
ತಿರುಗಿದನು ತತ್ಪಂಚ ಗೋದಾ
ವರಿಯ ತೀರಕೆ ತುಂಗಭದ್ರಾ
ವರ ನದಿಯನುತ್ತರಿಸಿ ಕಾಂಚೀನಗರಕೈತಂದ ೧೩

ಆ ನಗರದಧಿದೈವ ನಿಕರಕೆ
ತಾ ನಮಿಸಿ ತತ್ಸಕಲ ತೀರ್ಥ
ಸ್ನಾನ ಕರ್ಮವ ರಚಿಸಿ ಬಂದನು ಜಲಧಿ ತೀರದಲಿ
ವಾನರರ ಭುಜಬಲಸಮಾಖ್ಯಾ
ನೂನಶಾಸನವನು ಸುರಾರಿ ವಿ
ತಾನ ರವಿ ರಾಹುವನು ಕಂಡನು ಸೇತು ಬಂಧನವ ೧೪

ವರ ಧನುಷ್ಕೋಟಿಯಲಿ ಮಿಂದೀ
ಶ್ವರಪದಾಂಬುಜಕೆರಗಿ ತತ್ಪರಿ
ಸರದ ಪಂಚ ತಟಾಕದಲಿ ಘನ ಮಕರರೂಪದಲಿ
ಸುರವಧುಗಳಿರಲವರ ಶಾಪವ
ಪರಿಹರಿಸಿ ತತ್ತೀರ್ಥಸೇವಾ
ಪರಮ ಪಾವನ ಕರಣನಾದನು ಭೂಪ ಕೇಳೆಂದ ೧೫

ಈತನನು ಕಂಡರಿದು ಪಾಂಡ್ಯಮ
ಹೀತಳಾಧಿಪ ನಿಜ ಕುಮಾರಿಯ
ನೀತಗಿತ್ತನು ಬಭ್ರುವಾಹನನಾದನಾಕೆಯುಲಿ
ಈತ ಕಳುಹಿಸಿಕೊಂಡು ದೈತ್ಯಾ
ರಾತಿಗೆರಗಿಯನಂತಶಯನನ
ಖ್ಯಾತಿ ವಿಭವವನೀಕ್ಷಿಸುತ ಹರುಷದಲಿ ನಡೆತಂದ ೧೬

ನದಿ ನದವನುತ್ತರಿಸಿ ಹರಿ ಹರ
ಪದಯುಗಳಕಭಿನಮಿಸಿ ತದ್ದೇ
ಶದ ಸುತೀರ್ಥಕ್ಷೇತ್ರವೆನಿತುಳ್ಳನಿತನಾದರಿಸಿ
ಮುದದ ಮುರವಿನ ಹಂಸೆಗಳ ತನಿ
ಮದದ ಚಾತಕವಕ್ಕಿಗಳ ಮೇ
ಘದ ಸಘಾಡದ ಮೇಳವವ ನೋಡುತ್ತ ನಡೆತಂದ ೧೭

ಒಡ್ಡು ಮೆರೆದುದು ಮೇಘಘಟೆ ಬಿಸಿ
ಲೊಡ್ಡು ಮುರಿದುದು ಚಂದ್ರಸೂರ್ಯರ
ನಡ್ಡವಿಸಿ ಹಿಡಿಯಾಳ ಹಿಡಿದವು ಮುಗಿಲ ಜೋಣಿಗಳು
ಖಡ್ಡಿ ತಡೆವುದೆ ಕಡಲನುಡುಗಣ
ದೊಡ್ಡ ಕಾಣೆನು ಮುಗಿಲ ಬೆನಕಗೆ
ಲಡ್ಡುಗೆಗಳಾದವು ಸಮಸ್ತ ಗ್ರಹ ಸುತಾರೆಗಳು ೧೮

ಆಳ ಕರೆ ಕಟಕವನು ಸೂರ್ಯನ
ಮೇಲೆ ಬರಹೇಳೆಂಬ ಮೇಘ ನೃ
ಪಾಲಕನ ಡಂಗುರವೊ ಮೊಳಗುವ ಸಿಡಿಲಿನಬ್ಬರವೊ
ಆಲಿಕಲ್ಗಳೊ ಮುಗಿಲ ಮುಂಗಿಡಿ
ಯಾಳ ಹೊಯ್ಲಲಿ ಬೀಳ್ವ ತಾರಾ
ಮಾಲೆಗಳೊ ಜೀಮೂತ ಲತೆ ಲಂಬಿಸಿದುದಂಬರವ ೧೯

ಮಿಂಚಿದವು ದೆಸೆಗಳಲಿ ಗಮನಕೆ
ಮುಂಚಿದವು ಹಂಸೆಗಳು ನಭದಲಿ
ಹೊಂಚಿದುದು ಜೀವನಕೆ ಜೀವನ ವಿರಹಿ ನಿಕುರುಂಬ
ಪಂಚಪತಿಯರೊ ಮೇಣಿವರು ಪತಿ
ವಂಚಕಿಯರೋ ಗ್ರೀಷ್ಮಕಾಲದ
ಪಂಚತೆಯೊಳಾಲಿಂಗಿಸಿತು ದಿಗ್ವಧುಗಳಂಬುದವ ೨೦

ಜನಪ ಕೇಳೈ ಕಾರ್ಮುಗಿಲ ಮುಂ
ಬನಿಗಳೊಳು ವಹಿಲದಲಿ ಕೇರಳ
ಜನಪದದ ತೌಳವದ ಕೊಂಕಣ ವಿಷಮವೀಧಿಯಲಿ
ಜಿನುಗಿನಲಿ ಬಹು ಮಳೆಗಳಲಿ ನೆನೆ
ನೆನೆದು ಸಾಗರತೀರದಲಿ ಬಂ
ದನು ಕಿರೀಟಿ ವಿಚಾರಿಸುತ ಮುರಹರನ ಪಟ್ಟಣವ ೨೧

ಪುರವ ಹೊರವಂಟೆಂಟು ತಿಂಗಳು
ಪರಿಹರಿಸಿತೀ ಕೃಷ್ಣರಾಯನ
ಪುರದೊಳಗೆ ನೂಕುವೆನು ವರ್ಷಾಕಾಲ ವಿಭ್ರಮವ
ವರುಷವೊಂದು ಸಮಾಪ್ತಿ ಬಳಿಕಿನೊ
ಳರಸನಂಘ್ರಿ ವಿಲೋಕನಾ ವಿ
ಸ್ತರಣವಹುದೆಂದಾತ ನಿಶ್ಚೈಸಿದನು ಮನದೊಳಗೆ ೨೨

ಅರಸ ಕೇಳ್ ಸಂನ್ಯಾಸಿ ವೇಷದ
ಪರಿಕರವನಳವಡಿಸಿ ಶೌರಿಯ
ಪುರದ ಹೊರ ಬಾಹೆಯಲಿ ಹೆಚ್ಚಿದ ಬನದ ಮಧ್ಯದಲಿ
ಇರುಳು ಕಗ್ಗತ್ತಲೆಯೊಳೌಕುವ
ಸರಿವಳೆಗೆ ಸಲೆ ಸೇಡುಗೊಳುತು
ಬ್ಬರಿಸಿ ಕೃಷ್ಣನ ನೆನೆವುತಿದ್ದನು ಮರನ ಹೊಳ್ಳಿನಲಿ ೨೩

ದೇವನತ್ತ ಸತ್ಯಭಾಮಾ
ದೇವಿಯರ ಮೇಳದಲಿಯಿರುತಿ
ರ್ದೀ ವಿಲಾಸವ ನೆನೆದು ನಕ್ಕನು ಶಕ್ರನಂದನನ
ಆವಳೋ ನೆನಹಿನಲಿ ಸುಳಿದಳು
ಭಾವದಲಿ ಸುಮ್ಮಾನವೇನೆನೆ
ದೇವಿ ಬೇರೊಂದಿಲ್ಲ ಮನ ನಿನ್ನಾಣೆ ಕೇಳೆಂದ ೨೪

ನರನ ನೀ ಕೇಳ್ದರಿಯಲಾ ಸೋ
ದರದ ಮೈದುನನೆನಗೆ ಕುಂತಿಯ
ವರ ಕುಮಾರಕನಾತನೀ ದ್ವಾರಾವತಿಯ ಹೊರಗೆ
ಮರದ ಹೊಳ್ಳೊಳು ಹೊಕ್ಕು ಸಿಕ್ಕಿದ
ನರಿಯವೊಲ್ಲೈದಾನೆ ನಾನುಪ
ಚರಿಸಿ ಬಹೆನೆಂದೆನುತ ಮಂಚವನಿಳಿದನಸುರಾರಿ ೨೫

ಅರಸಿ ಕೇಳೀ ಬಂದ ಪಾರ್ಥನ
ಕರೆದುಪಾಯಾಂತರದೊಳೀವೆನು
ಸರಸಿಜಾನನೆಯನು ಸುಭದ್ರೆಯನಿಂದು ತಪ್ಪಿದರೆ
ಕರೆಸಿ ದುರ್ಯೋಧನಗೆ ಕೊಡಿಸುವ
ಭರವು ಬಲಭದ್ರನದು ಪಾರ್ಥನ
ಬರವು ಲೇಸಾಯ್ತೆನುತ ಹೊರವಂಟನು ನಿಜಾಲಯವ ೨೬

ಬಂದನಲ್ಲಿಗೆ ಫಲುಗುಣನ ಕಂ
ಡೆಂದನೀ ಶೈಲದ ಸಮೀಪದೊ
ಳಿಂದು ನಿಲು ಬಲಭದ್ರನೈತಹನುಚಿತ ವಚನದಲಿ
ಮಂದಿರಕೆ ಬರ ಹೇಳಿದರೆ ಬಾ
ಮುಂದೆ ನಿನ್ನಿಷ್ಟಾರ್ಥ ಸಿದ್ಧಿಪು
ದೆಂದು ಪಾರ್ಥನ ಸಂತವಿಸಿ ಮರಳಿದನು ಮುರವೈರಿ ೨೭

ಪರಮಹಂಸನ ಸುಳಿವು ಸಾಕ್ಷಾ
ತ್ಸರಸಿಜಾಕ್ಷನ ಲೀಲೆ ಗಡ ನ
ಮ್ಮರಸನಭ್ಯುದಯ ಪ್ರಪಂಚವಿದೆಂದು ನಗರದಲಿ
ಹರಹಿದನು ಹರಿ ವಾರ್ತೆಯನು ತಾ
ನರಿಯದಂತಿರೆ ಬಳಿಕ ನೀಲಾಂ
ಬರನು ಬಹಳೋತ್ಸವದೊಳೈದಿದನಾತನಿದ್ದೆಡೆಗೆ ೨೮

ವಂದಿಸಿದನಾ ಮುನಿಪತಿಯನಭಿ
ವಂದಿತಾಶೀರ್ವಾದ ಸಂಗತಿ
ಯಿಂದ ವಿವರಿಸಿದನು ಚತರ್ದಶವಿದ್ಯೆಗಳ ಗತಿಯ
ನಿಂದು ಮೂಗಿನ ಬೆರಳಿನಲಿ ಸಾ
ನಂದ ಮಿಗೆ ಬೆರಗಾಗಿ ನಮ್ಮಯ
ಮಂದಿರಕೆ ನೀವ್ ಬಿಜಯ ಮಾಡುವುದೆನುತ ಕೈಮುಗಿದ ೨೯

ನಾವು ಭಿಕ್ಷುಕರೆಮಗೆ ರಾಜ ಗೃ
ಹಾವಲಂಬನವೇಕೆ ಶೈಲ ವ
ನಾವಳಿಗಳಲಿ ವರ ನದೀತೀರದಲಿ ವಾಸಿಪೆವು
ಭಾವಿತ ಪ್ರಾರಬ್ಧಕರ್ಮ ಫ
ಲಾವಳಿಯನುಪಭೋಗಿಸುತ ದೇ
ಹಾವಸಾನವನೀಕ್ಷಿಸುತ್ತಿಹೆವೆಂದನಾ ಪಾರ್ಥ ೩೦

ಅಹುದು ನೀವೇಕಾಂತಭವನದೊ
ಳಿಹುದು ಚಾತುರ್ಮಾಸವಿದು ಸಂ
ನಿಹಿತವಾಯ್ತದ ನೂಕಿ ಬಿಜಯಂಗೈವುದಿಚ್ಛೆಯಲಿ
ವಿಹಿತ ಚರಿತರು ನೀವಲಾ ನಿ
ರ್ವಹಿಸುವೆನು ಶುಶ್ರೂಷೆಯನು ಕಿಂ
ಗಹನ ಮಾಡದಿರೆಂದು ತಂದನು ಯತಿಯನರಮನೆಗೆ ೩೧

ಇವರನರಮನೆಯೊಳಗೆ ಕನ್ಯಾ
ಭವನ ಮಧ್ಯದೊಳಿರಿಸಿ ಬಳಿಕಿನೊ
ಳಿವರ ಶುಶ್ರೂಷೆಗೆ ಸುಭದ್ರಾದೇವಿಯನು ಕರೆಸಿ
ಇವರ ಪೂರ್ವ ಮಹಾತ್ಮಕರು ನೀ
ನಿವರ ದೇವಾರ್ಚನೆ ಸಮಾಧಿ
ಪ್ರವರದಲಿ ಬೆಸಸಿದನು ಮಾಡುವುದೆಂದು ನೇಮಿಸಿದ ೩೨

ಹೊರಗೆ ಕೃಷ್ಣನ ಕರೆದಿವೆಲ್ಲವ
ನರುಹಿದಡೆ ಮರುಳಾಡಿದನು ಮೈ
ಮರೆದು ತಂಗಿಯನೊಯ್ದು ಬಿಸುಟಿರೆ ಬಣಗು ತಿರುಕನಲಿ
ಅರಸು ಮಗಳನು ತೊತ್ತುಗೆಲಸಕೆ
ಪರುಠವಿಸಿದಿರೆ ಶಿವಶಿವಾ ನಾ
ವರಿಯೆವಲ್ಲಿಯ ಲೇಸು ಹೊಲ್ಲೆಹವೆಮ್ಮದಲ್ಲೆಂದ ೩೩

ಮರುಳೆ ನೀ ಹೋಗಾರನೇನೆಂ
ದರಿಯೆ ಯತಿ ಸರ್ವಜ್ಞನೀತನು
ತಿರುಕನೇ ಸಾಕ್ಷಾತು ಲಕ್ಷ್ಮೀಕಾಂತ ಸನ್ನಿಭನು
ಬರಲಿ ಮಾಣಲಿ ಹಾನಿ ವೃದ್ಧಿಯ
ಹರಿಬವೆನ್ನದು ಯತಿ ಮಹಾತ್ಮರ
ನರಿಯದವರೇ ನಾವೆನುತ ಗಜರಿದನು ಬಲರಾಮ ೩೪

ಆದರೊಳ್ಳಿತು ತಂಗಿ ಬೆಸಗೈ
ದಾದರಿಸಲೀ ಯತಿಪತಿಯ ನಿಮ
ಗೀ ದುರಾಗ್ರಹವೇಕೆ ಕಾಂಬಿರಿ ಫಲವನಗ್ರದಲಿ
ಹೋದೆವಿದೆ ಮೌನದೊಳೆನುತ್ತಬು
ಜೋದರನು ಹಿಂಗಿದನು ಹರಿಯ ವಿ
ನೋದ ರಚನೆಯನೇನನೆಂಬೆನು ಭೂಪ ಕೇಳೆಂದ ೩೫

ಬಾಲಕಿಗೆ ಸಂನ್ಯಾಸಿ ದೇವರ
ಮೇಲೆ ಮನವಾಯ್ತವರಿಗೀಕೆಯ
ಮೇಲೆ ನೆಲಸಿತು ಚಿತ್ತ ಕಾಣೆನು ಜಪ ಸಮಾಧಿಗಳ
ಮೇಳವಿಸಿತನ್ಯೋನ್ಯ ರಾಗ ಛ
ಡಾಳಿಸಿದುದಭಿಲಾಷೆ ಕಾಮನ
ಬೇಳುವೆಗೆ ಬೆಂಡಾದುದಿಬ್ಬರ ಧೈರ್ಯವಡಿಗಡಿಗೆ ೩೬

ಮಿಡುಕುವುದು ಬಾಯ್ ಚಿತ್ತವವಳಲಿ
ತೊಡಕಿಹುದು ಜಪಮಾಲೆ ಬೆರಳಲಿ
ನಡೆವುತಿಹುದಕ್ಷಿಗಳು ಮುಕ್ಕುಳಿಸಿಹವು ಮಾನಿನಿಯ
ಮೃಡನ ಪೂಜೆಗೆ ಕೈ ಸುಭದ್ರೆಯ
ಹಿಡಿಹಿನಲಿ ಮನ ವರ ಸಮಾಧಿಯ
ತೊಡಹು ಹೊರಗೊಳಗಿಂದುಮುಖಿ ನರನಾಥ ಕೇಳೆಂದ ೩೭

ಜಾರಿದುದು ಮಳೆಗಾಲವತಿ ಬೆಳು
ಪೇರಿದವು ಮುಗಿಲುಗಳು ಕತ್ತಲೆ
ಸೂರೆವೋದುದು ಹಗಲಿರುಳು ರವಿ ಶಶಿಗಳುಪಟಳಕೆ
ತಾರಿದವು ನದಿ ನದಗಳಭ್ರಕೆ
ಹಾರಿದವು ಕಳಹಂಸೆಗಳು ತಲೆ
ದೋರಿದವು ತಾವರೆಗಳೆನೆ ಬಂದುದು ಶರತ್ಸಮಯ ೩೮

ಸುದತಿಯನು ಶುಭದಿವಸ ಸುಮುಹೂ
ರ್ತದೊಳಿರುಳು ವೈವಾಹವನು ಮಾ
ಡಿದರು ಹರಿ ವಸುದೇವ ದೇವಕಿಯುಗ್ರಸೇನ ನೃಪ
ಮದುವೆಯಾಯಿತು ಬಲನರಿಯದಂ
ದದಲಿ ಹೂಡಿದ ರಥವನೇರಿಸಿ
ಮದವಳಿಗೆ ಸಹಿತರ್ಜುನನ ಕಳುಹಿದನು ಮುರವೈರಿ ೩೯

ಪುರವ ಹೊರವಂಟವರು ಬರಲ
ಬ್ಬರಣೆಯಾಯ್ತುರಮನೆಯೊಳಗೆ ಸಂ
ಕರುಷಣಂಗರುಹಿದರು ಸಂನ್ಯಾಸಿಯ ಸಮಾಧಿಗಳ
ಅರಸು ಮಗಳನು ಕೊಂಡು ಹಾಯ್ದನೆ
ತಿರುಕ ಮುನಿ ಮಝಬಾಪು ಸುಭಟರ
ಕರೆ ಮುರಾರಿಯ ಮಾತು ತಾಗಿತೆನುತ್ತ ಗರ್ಜಿಸಿದ ೪೦

ಹೇಳಿವೇ ನಾವ್ ಮುನ್ನ ನೀವ್ ನೀ
ಲಾಳಕಿಯ ಕೆಡಿಸಿದಿರಲಾ ನೀ
ವಾಳ ನೆರಹಿದಡಿನ್ನು ಮಾಡುವುದೇನು ಕಡು ಮುಳಿದು
ಚಾಳಿಸಿದುದಪಕೀರ್ತಿಯಂಕಟ ವಿ
ಕಾಳಿಸಿತು ಯದುವಂಶವೆನೆ ಕರ
ವಾಳ ಜಡಿದೈದಿದನು ಹಲಧರನರ್ಜುನನ ರಥವ ೪೧

ಮುಸುಕಿದನು ನಾರಾಚದಲಿ ನಿ
ಪ್ಪಸರದಲಿ ಹಲಧರನ ಸೇನೆಯು
ಕುಸುರಿದರಿದನು ಕೊಂದನಗಣಿತ ಬಲವನಾ ಪಾರ್ಥ
ಎಸೆವನೇ ಸಂನ್ಯಾಸಿ ಮಾಡಿದ
ಹುಸಿಯುಪನ್ಯಾಸಕ್ಕೆ ಕೊಯ್ವೆನು
ರಸನೆಯನು ದೇವಕಿಯ ಮೇಲಾಣೆನುತ ಗರ್ಜಿಸಿದ ೪೨

ಬಳಿಕ ಹರಿದನು ಕೃಷ್ಣನೀತನ
ಕೆಲಕೆ ಕರೆದನು ಬಹಳ ರೋಷವ
ನಿಲಿಸಿರೇ ಸಾಕಿನ್ನು ವಸುದೇವಂಗೆ ದೇವಕಿಗೆ
ಮುಳಿವುದೀತನ ದೋಷವಲ್ಲಿದ
ತಿಳಿದೆವಾವರ್ಜುನನು ಗಡ ನಾ
ವಳುಕಲಿನ್ನೇಕೆನುತ ಬೋಧಿಸಿದನು ಹಲಾಯುಧನ ೪೩

ಅಕಟ ದುರ್ಯೋಧನಗೆ ತಪ್ಪಿಸಿ
ಸಕಲ ಯಾದವರಿಲ್ಲಿಗೈದರೆ
ವಿಕಳಮತಿ ನಾನ್ವೆಸಲೇ ಕೃಷ್ಣನ ಕುಮಂತ್ರವಿದು
ಅಕುಟಿಲಾಂತಃಕರಣತನ ಬಾ
ಧಕವಲೇ ಗುರುವರಿಗೆನುತ ಸ
ಭ್ರುಕುಟಿ ರೌದ್ರಾನನನು ಮುರಿದನು ಪುರಕೆ ಬಲರಾಮ ೪೪

ಹರಿಸಹಿತ ಬಲರಾಮನತ್ತಲು
ತಿರುಗಿದನು ಪವಮಾನ ಜವದಲಿ
ಪುರಕೆ ಬಂದನು ಪಾರ್ಥ ಪಯಣದ ಮೇಲೆ ಪಯಣದಲಿ
ಪುರದ ಬಹಿರೋದ್ಯಾನದಲಿ ಸಂ
ವರಿಸಿ ರಥವನು ನಿಲಿಸಿ ನೆಳಲಲಿ
ಪರಿಗತ ಶ್ರಮನಾಗಿ ನಗುತ ಸುಭದ್ರೆಗಿಂತೆಂದ ೪೫

ಅರಮನೆಗೆ ನಡೆ ದ್ರುಪದ ನಂದನೆ
ಕರೆಸಿದರೆ ನೀ ಹೋಗು ನಿರುತವ
ನರುಹದಿರು ತುರುಗಾಹಿಗಳ ಮಗಳೆಂದು ನುಡಿ ಸಾಕು
ಅರಸಿ ಮಿಗೆ ಮನ್ನಿಸುವಳಲ್ಲಿರು
ಕರೆಸಿಕೊಂಬೆನು ಬಳಿಕಲೆಂದೀ
ಸರಸಿಜಾಕ್ಷಿಯ ಕಳುಹಿದನು ನಿಜ ರಾಜಮಂದಿರಕೆ ೪೬

ಬಂದಳಬಲೆ ಸಮಸ್ತಪುರಜನ
ವಿಂದುವದನೆಯ ನೋಡುತ್ತಿದ್ದುದು
ಮಂದಿ ಕವಿದುದು ಮನುಜೆಯೋ ಸುರಲೋಕ ವಧುವೆನುತ
ಮಂದಿರಕೆ ಬರೆ ಬಾಗಿಲವದಿರು
ನಿಂದರಲ್ಲಿಯದಲ್ಲಿ ಬಳಿಕರ ೪೭
ವಿಂದಮುಖಿಯರು ಕಂಡು ದ್ರೌಪದಿಗರುಹಿದರು ಹದನ

ಕರೆಸಿ ಕಾಣಿಸಿಕೊಂಡು ಪಾಂಡವ
ರರಸಿ ಬೆಸಗೊಳಲೀಕೆ ಪಾರ್ಥನ
ಪರುಠವದ ಮಾತುಗಳನೆಂದಳು ನಗೆಯ ಮೊಳೆ ಮಿನುಗೆ
ಸುರ ಭುಜಂಗಮ ವಧುವೊ ನೀ ಮೇ
ಣರಸು ಮಗಳೋ ತಂಗೀ ನೀ ಗೊ
ಲ್ಲರ ಮಗಳೆ ಪುಸಿಯೆನುತ ತಲೆದೂಗಿದಳು ಪಾಂಚಾಲಿ ೪೮

ಮುಸಗಿದವು ನಿಸ್ಸಾಳ ತತಿ ಗ
ರ್ಜಿಸಿದವರ್ಜನ ಬಂದನಿದೆ ಯೆಂ
ದೊಸಗೆವಾತಿನೊಳೂರ ಸುಳಿದರು ದೂತರಲ್ಲಲ್ಲಿ
ಶಶಿಮುಖಿಯರುಪ್ಪಾರತಿಯ ಮಿಂಗಿ
ಲೆಸೆವ ರತುನಾವಳಿಯ ಕಾಂತಾ
ವಿಸರ ನೂಕಿತು ಪಾರ್ಥ ಹೊಕ್ಕನು ರಾಜಮಂದಿರವ ೪೯

ಅರಸ ಭೀಮರಿಗೆರಗಿ ನಕುಲಾ
ದ್ಯರನು ಕಾಣಿಸಿಕೊಂಡು ದೇಶಾಂ
ತರದ ತೀರ್ಥೋನ್ನತಿಯನಾ ವೃತ್ತಾಂತ ಸಂಗತಿಯ
ಮುರಹರನ ಸೌಹೃದವನಾತನ
ಕರುಣ ಕನ್ಯಾಲಾಭವನು ವಿ
ಸ್ತರಿಸಿ ಹರುಷಾಂಬುಧಿಯೊಳದ್ದಿದನಗ್ರಜಾನುಜರ ೫೦

ಅರಸ ಕೇಳ್ಳೈ ದ್ರೌಪದಿಯ ಮನ
ಬರಿಸಿ ಬೇರರಮನೆಯೊಳೀಕೆಯ
ನಿರಿಸಿದನು ಹರುಷದಲಿ ಕಳೆದರು ಕಾಲ ವಿಭ್ರಮವ
ಇರಲಿರಲು ಪಾರ್ಥಗೆ ಸುಭದ್ರೆಗೆ
ವರಕುಮಾರಕನುದಿಸಿದನು ವಿ
ಸ್ತರಣವಾಯ್ತಭಿಮನ್ಯುವಿನ ಜನನೋತ್ಸವಾಭ್ಯುದಯ ೫೧

ಇಪ್ಪತ್ತನೆಯ ಸಂಧಿ

ಸೂ. ಖಾಂಡವದ ವನ ದಹನ ದಾವೋ
ಚ್ಚಂಡ ಗಂಡರ ಗಂಡ ದಿವಿಜರ
ಹಿಂಡು ಗೋಳಿಡೆ ಧಾಳಿಯಿಟ್ಟನು ಚಂಡ ಗಾಂಡೀವಿ

ಕೇಳು ಜನಮೇಜಯ ಧರಿತ್ರೀ
ಪಾಲ ಪಾರ್ಥ ಸುಭದ್ರೆಯಲಿ ಭೂ
ಪಾಲತಿಲಕನು ಜನಿಸಿದನಲ್ಲೈ ಜಾತ ಮಾತ್ರದಲಿ
ಮೇಲು ಮೊಳಗಿನ ದುಂದುಭಿಯ ದಿವಿ
ಜಾಳಿಗಳ ಹೂವಳೆಯ ಹರುಷದ
ಮೇಳವದ ಮೈಸಿರಿಯನೇನೆಂಬೆನು ಧನಂಜಯನ ೧

ಕಲಿತನಕೆ ನೆಲೆಯಾಯ್ತು ಭುಜದ
ಗ್ಗಳಿಕೆಗಾಸ್ಪದವಾಯ್ತು ನಿಜ ಚಾ
ಪಳವ ಬಿಸುಟಳು ವೀರಸಿರಿ ವಿಕ್ರಮದ ಸಿರಿಸಹಿತ
ಹಳಿವು ಕಳವಳ ಭೀತಿ ಭಂಗ
ಸ್ಖಲನ ಕಂಪನವೆಂಬವಾತನ
ನೆಳಲ ಸೀಮೆಯ ಸೋಂಕಲಮ್ಮವು ಭೂಪ ಕೇಳೆಂದ ೨

ಜಾತಕರ್ಮದ ನಂತರದ ವಿ
ಖ್ಯಾತನಾಮ ವಿಧಾನವನು ಸಂ
ಪ್ರೀತಿಯಲಿ ಮಾಡಿದನು ಖಂಪಿ ಭೂಪತಿಯನುಜ್ಞೆಯಲಿ
ವೀತ ಭಯನಭಿಮನ್ಯುವೆನೆ ರಿಪು
ಜಾತ ನಡುಗಿತು ಲೋಕ ಮೂರರೊ
ಳೀತನುದಯದ ಕೀರ್ತಿ ಪಸರಿಸಿತರಸ ಕೇಳೆಂದ ೩

ಯಮಸುತಗೆ ಭೀಮಂಗೆ ಕಿರೀಟಿಗೆ
ಯಮಳರಿಗೆ ಸುಕುಮಾರಕರು ನಿಜ
ರಮಣಿಯಲಿ ಜನಿಸಿದರು ಶ್ರುತಸೋಮಕನು ಪ್ರತಿವಿಂಧ್ಯ
ವಿಮಲ ಶ್ರುತಕೀರ್ತಿ ಪ್ರತಾಪೋ
ತ್ತಮನು ಶ್ರುತಸೇನಾಖ್ಯನುರು ವಿ
ಕ್ರಮ ಶತಾನೀಕಾಭಿಧಾನರು ದ್ರುಪದ ತನುಜೆಯಲಿ ೪

ಇವರು ಕಳುಹಿದ ಹರುಷ ವಾರ್ತಾ
ಶ್ರವಣ ರಸದಲಿ ಮನಮುಳುಗಿ ಯಾ
ದವ ಶಿರೋಮಣಿ ರಾಮ ವಸುದೇವಾದಿಗಳು ಸಹಿತ
ಇವರ ಪುರಕೈತಂದರಿವರು
ತ್ಸವದಲಿದಿರ್ಗೊಂಡೊಸಗೆಯಲಿ ಬಾಂ
ಧವರ ಸಂಭಾವಿಸಿದರೈ ಯಮನಂದನಾದಿಗಳು ೫

ಅರಸಿ ಕಾಣವು ವೇದತತಿ ತಾ
ನರಸಿ ಬಂದನು ಭಕ್ತರನು ತನ
ಗೆರಗಿ ಮೆಚ್ಚಿಸಲರಿಯರಜ ರುದ್ರಾಮರೇಶ್ವರರು
ಎರಗುವನು ಯಮಜಂಗೆ ತನ್ನನು
ಕುರುಹುಗಾಣವು ವೇದಶಿರವಿದು
ಮರವೆಯೋ ಹರಿ ಬಂದು ಕಂಡನು ಧರ್ಮನಂದನನ ೬

ಲೀಲೆಯೋಯಿದು ಮೋಣು ಕೃಷ್ಣನ
ಬಾಲಕೇಳಿಯ ನೆನಹೊ ಬೊಮ್ಮದ
ಕೌಳಿಕದ ಕಣುಮಾಯೆಯೋ ಶಿವಶಿವ ಮಹಾದೇವ
ಕಾಲಿಗೆರಗಿದ ಕೃಷ್ಣನನು ಭೂ
ಪಾಲ ತೆಗೆದಪ್ಪಿದನು ನಿಗಮದ
ಮೌಳಿ ತಲೆವಾಗಿದವು ಲಜ್ಜಾ ಭೂರಿಭಾವದಲಿ ೭

ಅರಸ ಸಹಿತ ಸಮಸ್ತ ಯಾದವ
ಪರಿಕರದ ಮೇಳದಲಿ ಯಾದವ
ರರಸು ಬಿಜಯಂಗೈದು ಕುಂತಿಯ ಸುತರ ಭವನದಲಿ
ಅರಸಿಯರ ಸುಕುಮಾರ ವರ್ಗವ
ಕರೆಸಿ ಕಾಣಿಸಿಕೊಂಡು ದಿವ್ಯಾ
ಭರಣ ವಸನಾದಿಯಲಿ ಮನ್ನಿಸಿದನು ಮಹೀಶ್ವರರ ೮

ಜಲಧಿ ಮಧ್ಯದೊಳಿರವೊ ಗಗನ
ಸ್ಥಳವೊ ಮೇಣು ಮಹಾಂಧಕಾರದ
ಕಳಿವುಗಳ ವೈಕುಂಠವೋ ಮುನಿಜನದ ಹೃದ್ಗುಹೆಯೊ
ತಿಳಿಯೆ ಸಚರಾಚರದ ಚೇತನ
ದೊಳಗೆಯೋ ನೆಲೆಯಾವುದೆಂಬ
ಗ್ಗಳಿಯ ದೈವದ ನಿಲವ ಕಂಡೆನು ಪಾರ್ಥಭವನದಲಿ ೯

ಈತನರ್ಜುನನರಮನೆಯೊಳಭಿ
ಜಾತನೆನಿಪಭಿಮನ್ಯುವನು ಸಂ
ಪ್ರೀತಿಯಿಂದಪ್ಪಿದನು ಕೊಟ್ಟನು ಬಾಲದೊಡಿಗೆಗಳ
ಖ್ಯಾತಪಂಚ ದ್ರೌಪದಿಯ ಸಂ
ಜಾತರನು ಮನ್ನಿಸಿ ಮಹಾವಿಭ
ವಾತಿಶಯದಲಿ ಪತಿಕರಿಸಿದನು ಪಾಂಡುನಂದನರ ೧೦

ಅರಸ ಕೇಳೈ ಹಲವು ದಿನ ಸಂ
ಚರಿಸಿ ಸೌಖ್ಯದೊಳಿರ್ದು ತಮ್ಮಯ
ಪುರಿಗೆ ಬಲಭದ್ರನನು ಯಾದವರಾಯ ದಳಸಹಿತ
ಹರಿ ಸಮಾಧಾನದಲಿ ಕಳುಹಿಸಿ
ನರನೊಡನೆ ವೈಹಾಳಿ ಮೃಗಯಾ
ವರ ವಿಹಾರದೊಳಿದ್ದನಿಂದ್ರಪ್ರಸ್ಥ ನಗರಿಯಲಿ ೧೧

ಹರಿ ಧನಂಜಯರೊಂದು ದಿನ ಮೃಗ
ಹರಣ ಕೇಳಿಕಳಾಪದಲಿ ಸಂ
ಚರಿಸಿ ಬನದಲಿ ಬಹಳ ಮಾರ್ಗಶ್ರಮದ ಭಾರದಲಿ
ಬರುತ ನೀರಡಿಸಿದರು ಕಂಡರು
ಸರಸಿಯನು ರಥವಿಳಿದು ನೆಳಲಲಿ
ಪರಿಹೃತ ಶ್ರಮರಾಗೆ ಹರಿ ಹೊಕ್ಕನು ಸರೋವರವ ೧೨

ಆ ಸಮಯದಲಿ ಬಂದನೊಬ್ಬನು
ಭೂಸುರನು ಕಿಡಿಗಳ ತುಷಾರದ
ಮೀಸೆ ಗಡ್ಡದ ಸುಳಿದಲೆಯ ಕಬ್ಬೊಗೆಯ ಜುಂಜುಗಳ
ಬಾಸರದ ಬಳಲುಡಿಗೆಯ ಮಟ್ಟೆಯ
ಧೂಸರದ ಮೈದೊಡಿಗೆ ಮೆರೆಯೆ ವಿ
ಲಾಸದಲಿ ನಡೆತಂದನರ್ಜುನ ದೇವನಿದ್ದೆಡೆಗೆ ೧೩

ಹರಸಿ ವೇದಾರ್ಥವನು ಮಿಗೆ ವಿ
ಸ್ತರಿಸಿ ಕೊಂಡಾಡಿದನು ವಿಪ್ರನ
ಪರಮ ಯೋಗ್ಯತೆಗಾರು ಸರಿ ಪರಮೇಷ್ಠಿ ಹೊರತಾಗಿ
ಬರವಿದೇನೆನಗೇನನುಗ್ರಹ
ವರಿಸಿದರೆ ನಿಮ್ಮಿಷ್ಟವನು ಗೋ
ಚರಿಸುವೆನು ತಾನೆನುತ ನುಡಿದನು ಪಾರ್ಥ ಭೂಸುರಗೆ ೧೪

ಪಾರ್ಥ ಕೇಳತಿ ಗಹನವೇನ್ ಗ್ರಾ
ಸಾರ್ಥಿಗಳು ನಾವಾದೆವಮ್ಮಿ
ಷ್ಟಾರ್ಥ ಸಿದ್ಧಿಯ ಘಟಿಸು ಸಾಕು ಸಮಗ್ರ ಫಲವಹುದು
ತೀರ್ಥವೇಕಿನ್ನತಿಥಿಯಿರಲು ಪ
ರಾರ್ಥಸಾಧನತನವೆ ಪರಮ
ಸ್ವಾರ್ಥವೆಂಬರು ಸುಜನರೆಂದನು ಕಪಟದ್ವಿಜ ನಗುತ ೧೫

ಕೊಟ್ಟೆನೆಂದನು ಪಾರ್ಥನಿವರೊಡ
ಬಟ್ಟರೀ ನುಡಿಗೇಳಿ ದನುಜ ಘ
ರಟ್ಟ ಬಂದನು ಹದನನರಿದನು ಹವ್ಯವಾಹನನ
ಕೊಟ್ಟುದೇನು ಕಿರೀಟಿಯಿವರೇ
ಮುಟ್ಟಿದರೆ ಮುನಿವವರಲ್ಲೆ ನೀ
ಕೊಟ್ಟುದುಣಬಡಿಸುವುದು ಭಾರವಿದೆಂದನಸುರಾರಿ ೧೬

ಮುಖರನಾದೈ ಪಾರ್ಥ ಬರ್ಹಿ
ರ್ಮುಖರ ಬಾಣಸದಾತನೀತನು
ಸುಖವೆ ಹೇಳೈ ತಂದೆ ಖಾಂಡವ ವನದ ನಿರ್ದಹನ
ನಿಖಿಳನಿರ್ಜರ ಬಲಸಹಿತ ಶತ
ಮಖನೊಡನೆ ವಿಗ್ರಹವಲಾ ಸಂ
ಮುಖಕೆ ಬಂದುದು ಭಂಗವೆಂದನು ನಗುತ ಮುರವೈರಿ ೧೭

ಭಂಗವೇಕೈ ಕೃಷ್ಣ ನಿರ್ಜರ
ಪುಂಗವನ ಗೆಲಿದವನ ಬಾಣಸಿ
ಗಂಗೆ ಬಾಣಸ ಮಾಡುವೆನು ಖಾಂಡವ ಮಹಾವನವ
ಅಂಘವಣೆಯನು ನೋಡು ನೀನೇ
ಕಾಂಗದಲಿ ನಿರ್ವಹಿಸುವೆನು ಭಯ
ಭಂಗವುಂಟೇ ನಿನ್ನ ಕೃಪೆಯಿರಲೆಂದನಾ ಪಾರ್ಥ ೧೮

ಮೆಚ್ಚಿದನು ಘೃತಯೋನಿ ಪೂತುರೆ
ನಿಚ್ಚಟನು ನೀನೆನುತ ಕಿಡಿಗಳ
ಬಿಚ್ಚಲುದುರಿತು ಚಾಪಮಾರ್ಗಣ ರಥ ತುರಂಗಚಯ
ಅಚ್ಚರಿಯನೇನೆಂಬೆನೈ ಸ
ಪ್ರಾರ್ಚಿಯಿತ್ತನು ವನವನಿಂದ್ರನ
ಮುಚ್ಚು ಮರೆಯೇಕಿನ್ನು ನಮಗುಣಬಡಿಸು ಸಾಕೆಂದ ೧೯

ಧರಣಿಪತಿ ಕೇಳಗ್ನಿಯಿತ್ತನು
ಹರಿ ಧನಂಜಯರಿಗೆ ರಥಂಗಳ
ನುರು ಶರಾವಳಿ ದಿವ್ಯಧನು ಕೌಮೋದಕೀ ಗದೆಯ
ವರ ತನುತ್ರ ಸಿತಾಶ್ವವಕ್ಷಯ
ಶರ ನಿಷಂಗಾದಿಗಳನಿವರು
ಬ್ಬರಿಸಿದರು ಹರುಷದಲಿ ನೆನೆದರು ನಯನ ವಾರಿಯಲಿ ೨೦

ಹೂಡಿದರು ರಥವೆರಡನಿವರು ಸ
ಘಾಡದಲಿ ಕಪಿ ಗರುಡ ಸಿಂಧವ
ಜೋಡಿಸಿದರೇರಿದರು ನಗುತ ಧನಂಜಯಾಚ್ಯುತರು
ಮೂಡಿಗೆಯ ಮೊನೆಗಣೆಗಳಿಗೆ ಕೈ
ನೀಡಿ ಬೊಬ್ಬಿರಿದರು ದಿಗಂತವ
ನೀಡಿರಿದುದಬ್ಬರಣೆ ಬಿರಿದುದು ಧರಣಿ ಧಾಳಿಯಲಿ ೨೧

ಬೊಬ್ಬಿರಿದು ಹರಿ ಪಾಂಚಜನ್ಯವ
ನುಬ್ಬಿ ಧ್ವನಿ ಮಾಡಿದನು ಪಾರ್ಥನ
ತೆಬ್ಬಿನಬ್ಬರ ತೀವಿತಾ ಬ್ರಹ್ಮಾಂಡ ಮಂಡಲವ
ಗಬ್ಬರಿಸಿದುದು ಗಗನವನು ಶರ
ದುಬ್ಬರದ ಬಲುಗಿಡಿಯ ಗಡಣವು
ಹಬ್ಬಿ ಹರಿದವು ದೆಸೆದೆಸೆಗೆ ನರನಾಥ ಕೇಳೆಂದ ೨೨

ಧಾಳಿಯಿಟ್ಟರು ಸುರವನಕೆ ಸುರ
ಜಾಲ ಸರಿಯಿತು ಬೊಬ್ಬೆಯಲಿ ದೆ
ಖ್ಖಾಳಿಸಿದುದುತ್ಪಾತ ಶತ ಖಾಂಡವದ ಮಧ್ಯದಲಿ
ಕೂಳಿಗಳ ಕುಡಿ ಮೀನವೋಲ್ವಿಹ
ಗಾಳಿ ಹುದುಗಿತು ನಡುಗಿದರು ವನ
ಪಾಲಕರು ನಿಂದೊಣಗಿದವು ಹರಿ ಚಂದನಾದಿಗಳು ೨೩

ತೂಗಿ ಬಾಣವ ಹೂಡಿ ಕಿವಿವರೆ
ಗಾಗಿ ಬರಸೆಳೆದಾರಿ ಬೊಬ್ಬಿರಿ
ದಾಗಲಿಂತೆಂದನು ಧನಂಜಯನಾ ಧನಂಜಯಗೆ
ಈಗಲೀ ವನದೊಳಗೆ ಖಗ ಮೃಗ
ನಾಗ ಸುರ ದನುಜಾದಿ ಜೀವರ
ಹೋಗಲೀಯದೆ ತರುಬಿ ಶರದಲಿ ಕಾಯಬೇಕೆಂದ ೨೪

ಹೈ ಸಮಗ್ರಾತಿಥ್ಯದಲಿ ನಿಮ
ಗೀ ಸಮಸ್ತ ಪ್ರಾಣಿಸಹಿತ ಸು
ರೇಶನುದ್ಯಾನವನು ಕೊಟ್ಟೆನು ಬಾಣ ಧಾರೆಯಲಿ
ನೀ ಸಮಾಧಾನದಲಿ ಸುಪುರೋ
ಡಾಶವಿದೆ ಸಮಿದಾಜ್ಯ ಸಹಿತ ಮ
ಹಾ ಸುವಿಸ್ತಾರದಲಿ ಕೊಂಬುದು ಭೀತಿ ಬೇಡೆಂದ ೨೫

ಎನುತ ಬಿಡೆ ತಿರುವಾಯನೊದೆದು
ಬ್ಬಿನಲಿ ಬೊಬ್ಬಿರಿದಂಬು ಸುರಪನ
ವನವ ಮುತ್ತಿತು ಕೂಡೆ ಹೊತ್ತಿತು ಹೊಗೆಯ ಹೊರಳಿಯಲಿ
ತನಿಗಿಡಿಯ ದಳ್ಳುರಿಯ ನಾಲಿಗೆ
ಕೊನೆಗಳಲ್ಲಾಡಿದವು ಕಡು ಲಾ
ಗಿನಲಿ ಲಂಬಿಸಿ ಚುಂಬಿಸಿದುದುರಿ ಲಲಿತ ನಂದನವ ೨೬

ಹೊದರಿನಲಿ ಭುಗುಭುಗಿಲು ಭುಗಿಲೆಂ
ದೊದೆದುದುರಿಯಂಬರವನೊಣಗಿದ
ಬಿದಿರ ಮೆಳೆಯಲಿ ಧಗಧಗಿಸಿ ಛಟಛಟನೆ ಛಟಛಟಿಸಿ
ಕದಲಿ ಖರ್ಜೂರಾದಿ ತರು ಜಾ
ಲದಲಿ ಸಿಮಿ ಸಿಮಿ ಸಿಮಿ ಸಿಮಾಯತ
ವೊದಗೆ ಗಹನೋದರದೊಳಗೆ ಘಾಡಿಸಿತು ಘನ ವಹ್ನಿ ೨೭

ಏನನೆಂಬೆನು ದಿವಿಜ ರಾಜೋ
ದ್ಯಾನ ಹಾನಿಯುನಾತನಾಳು ಕೃ
ಶಾನುವಿನ ತನಿಗೊಬ್ಬನೀ ಕೃಷ್ಣಾರ್ಜುನರ ಬಲುಹ
ಆ ನಿಖಿಳ ನಿರ್ಜರರು ತಾಗಿ ವಿ
ಮಾನ ಗತಿಯಲಿ ಹಾಯ್ದರಂದವ
ಮಾನಗತಿಯಲಿ ಗಗನದಲಿ ಗೀರ್ವಾಣಪತಿ ಪುರಕೆ ೨೮

ಹೊಗೆಯ ಬಳಿಯಲಿ ತಳಿತ ಹುಯ್ಯಲ
ಬೆಗಡಿದೇನೋ ಕೇಳೆನುತ ಸಿರಿ
ಮೊಗದ ದುಗುಡದ ಸಾವಿರಾಲಿಯೊಳೊಗುವ ಕಿಡಿಗಳಲಿ
ಹಗೆಗಳಾರು ನಿವಾತ ಕವಚಾ
ದಿಗಳೊ ತಾನಾರೆಂಬ ಶಕ್ರನ
ದುಗುಡವನು ದೇವಾಳಿ ಕಂಡುದು ದೂರಿದರು ನರನ ೨೯

ನಿನಗೆ ಮಗನೇ ಪಾರ್ಥ ನಿನ್ನರ
ಮನೆಯ ಬಾಣಸದಾತನೇ ಶಿಖಿ
ಯನುಜನೇ ಮುರವೈರಿ ನಿನಗನುಕೂಲರಾದರಲೆ
ಬನದ ಬೇಗೆಯೊ ಪರಿಭವಾಲಂ
ಬನದ ವೊಸಗೆಯೊ ಬಂದುದಿದೆ ಬಿಡು
ಮನೆಯ ಮನ್ನೆಯ ಗಂಡನಾಗೆಂದುದು ಸುರಸ್ತೋಮ ೩೦

ಐಸಲೇ ನಮ್ಮವರಲಾ ಹೋ
ಹೋ ಸುರರು ಕಳವಳಿಸದಿರಿಯಾ
ಪೈಸನಾಹುತಿಗೊಳಲಿ ಪಾವಕನೆಮ್ಮ ಖಾಂಡವವ
ಈ ಸುರರಿಗಾ ನರರಿಗಂತರ
ವೇಸು ಪೂತುರೆ ಕಾಲಗತಿಯೆನು
ತಾ ಸುರೇಶ್ವರ ಖಾತಿಗೊಂಡನು ಕೃಷ್ಣ ಪಾರ್ಥರಿಗೆ ೩೧

ಕಾಹು ತೆಗೆಯಲಿ ಕಲ್ಪಮೇಘ
ವ್ಯೂಹಗಳ ಬರಹೇಳು ಕಾಂಬೆನು
ಸಾಹಸವನಿದರೊಳಗೆ ಕೃಷ್ಣ ಧನಂಜಯ ದ್ವಯದ
ಈ ಹದಕೆ ಪಡಿ ಪುಷ್ಪವಿಲ್ಲವ
ಗಾಹಿಸಲಿ ಖಾಂಡವವ ಹುಲ್ಲೆಯು
ಹೂಹೆಗಳು ಹೆಬ್ಬುಲಿಗೆ ಹಾಯ್ವುವೆನುತ್ತ ಗರ್ಜಿಸಿದ ೩೨

ಅರಸ ಕೇಳ್ಕಲ್ಪಾಂತ ಮೇಘೋ
ತ್ಕರದ ಪಾಳಯವೆತ್ತಿ ಬಿಟ್ಟುದು
ಧರಣಿಯಗಲಕೆ ಧಾಳಿಯಿಟ್ಟವು ಸಿಡಿಲ ಮಿಂಚುಗಳು
ಕರಿಯ ಬರಿಕೈಗೆಣೆಯೆನಿಪ ನಿ
ಷ್ಠುರದ ಧಾರಾಸಾರ ತೆರಳಿಚಿ
ಸುರಿದುದಾ ಖಾಂಡವದ ಸೀಮಾ ಸನ್ನಿವೇಶದಲಿ ೩೩

ಆ ಸಕಲ ಸಾಗರವನೊಂದೇ
ಶ್ವಾಸದಲಿ ತೆಗೆದೆತ್ತಿ ಮೊಗುಚಿದ
ವೀ ಸಮಸ್ತ ಬಲಾಹಕಾವಳಿ ಬನದ ಮಧ್ಯದಲಿ
ಏಸು ಸಾಹಸ ಸತ್ವ ತನಗುಂ
ಟೈಸರಲಿ ತಲೆಯೆತ್ತಿ ಜಲದಲಿ
ಘಾಸಿಯಾದನು ವಹ್ನಿ ನುಡಿದನು ಕೃಷ್ಣ ಪಾರ್ಥರಿಗೆ ೩೪

ಕಲಹವಿಂದ್ರನ ಕೂಡೆ ಕಲ್ಪದ
ಮಳೆಗಳಿವು ಮಾಣಿಸಿದವೂಟವ
ನೆಳೆದವಣಲಿನ ತುತ್ತನರ್ಜುನ ಕಾಯ್ದುಕೊಳ್ಳೆನಲು
ಮಳೆಗೆ ಶರಪಂಜರವ ವಿರಚಿಸಿ
ಬಳಿಕ ವಾಯುವ್ಯಾಸ್ತ್ರದಲಿ ನಿ
ಸ್ಖಲಿತ ಮೇಘವ್ರಜವನೆಚ್ಚನು ಪಾರ್ಥ ವಹಿಲದಲಿ ೩೫

ಏನ ಹೇಳುವೆನರಸ ಪಾರ್ಥನ
ನೂನ ಶಕ್ತಿಯನುರುಬಿದನು ಪವ
ಮಾನ ಶರದಲಿ ಪುಷ್ಕಳಾವರ್ತಾದಿ ಘನಘಟೆಯ
ಭಾನು ತಿಮಿರಂಗಳಿಗೆ ಮೇಘ ಮ
ಹಾನಿಲಂಗಳಿಗಾವುದಂತರ
ಸೋನೆ ತೆಗೆದುದು ಹೊಗೆದುದಾ ಖಾಂಡವ ಮಹೋದ್ಯಾನ ೩೬

ಹಾರಲೂದಿತು ಮೇಘವನು ಕಿಡಿ
ತೂರಲುಬ್ಬರಿಸಿದುದು ವಹ್ನಿಯ
ನೇರಿಸಿತು ಖಾಂಡವದೊಳಗೆ ಬಿರುಗಾಳಿ ಸುಳಿಸುಳಿದು
ಮೋರೆಯೊಣಗಿದುದಮರರಿಗೆ ಮೈ
ಮಾರಿಗಳ ಸುಡು ಮೂಲೆಯುವದಿರು
ಮೀರಿದರಲಾಯೆನುತ ಸುರಪತಿ ತರಿಸಿದನು ಗಜವ ೩೭

ನೆರೆದುದಮರರು ಸಿದ್ಧ ವಿದ್ಯಾ
ಧರ ಮಹೋರಗ ಯಕ್ಷ ರಾಕ್ಷಸ
ಗರುಡ ಕಿನ್ನರ ಸಾಧ್ಯ ಗುಹ್ಯಕ ಭೂತ ಗಂಧರ್ವ
ತರಣಿ ವಸು ರುದ್ರಾದಿಗಳು ಮೋ
ಹರಿಸಿದರು ಮುಂಗುಡಿಯಲಿಂದ್ರನ
ಸಿರಿಯ ರಭಸವನೇನನೆಂಬೆನು ಭೂಪ ಕೇಳೆಂದ ೩೮

ಮುಸಗಿತಮರವ್ರಾತವಭ್ರವ
ಮುಸುಕಿದವು ಝಲ್ಲರಿಗಳಿಂದ್ರನ
ವಿಸಸನಕೆ ಮೆಚ್ಚಿಸುವೆ ವಸುಗಳನೆನುತ ತಮತಮಗೆ
ಮುಸುಕಿದರು ಮೃಗರಾಜ ಸಿಂಹದ
ಮುಸುಕನುಗಿವಂದದಲಿ ಬಾಣ
ಪ್ರಸರವನು ಹರಹಿದರು ಮುಂದೆ ಧನಂಜಯಾಚ್ಯುತರ ೩೯

ಹೂಣೆ ಮಿಗೆ ಹೊಕ್ಕೆಚ್ಚರೋ ಬಹು
ಬಾಣವನು ದೃಢಬಾಣರೋ ಗೀ
ರ್ವಾಣರೋ ನೀವಾರು ನುಡಿಯಿರಲೈ ಮಹಾದೇವ
ಸಾಣೆಯಲಗಿಗೆ ಸಾಲುವಿರಿ ತನಿ
ಶೋಣಿತವ ನೀವ್ಕೊಡದೆ ಸುರಪತಿ
ಯಾಣೆ ಹಿಮ್ಮೆಟ್ಟಿದರೆನುತ ಬೊಬ್ಬಿರಿದು ನರನೆಚ್ಚ ೪೦

ತುರುಗಿ ಕೂರಂಬುಗಳು ಮೈಯಲಿ
ಮುರಿದವರ್ಜುನನೆಸುಗೆಯಲಿ ಕೈ
ಮರೆದುದಮರ ನಿಕಾಯ ಕೆದರಿತು ದೊರೆಯ ಮನ್ನಿಸದೆ
ಮುರಿದುದೀ ಕೃಷ್ಣಾರ್ಜುನರ ಬೊ
ಬ್ಬಿರಿತಕವರೆದೆಯೊಡೆಯಲಿಂದ್ರನ
ಮರೆಯ ಹೊಕ್ಕುದು ದೇವಸಂತತಿ ಭೂಪ ಕೇಳೆಂದ ೪೧

ನರರು ರಚಿಸಿದ ಹವ್ಯಕವ್ಯೋ
ತ್ತರ ಹವಿರ್ಭಾಗವನು ತಿಂದು
ಬ್ಬರಿಸಿ ದೇವಸ್ತ್ರೀ ಕದಂಬದ ಖೇಳಮೇಳದಲಿ
ಇರವು ನಿಮಗೀ ರೌದ್ರಬಾಣ
ಸ್ಫುರಿತ ಕರ್ಕಶ ವಿಸ್ಫುಲಿಂಗೋ
ತ್ಕರದ ಝಳ ನಿಮಗೇಕೆಯೆಂದನು ಪಾರ್ಥ ನಸುನಗುತ ೪೨

ಮುರಿದ ನಿರ್ಜರ ಸೇನೆಗಭಯದ
ಕರವ ನೆಗಹಿ ಕರೀಂದ್ರನನು ಶಿರ
ಬಿರಿಯಲಂಕುಶ ಮೊನೆಯೊಳೊತ್ತಿ ಮಹೋಗ್ರ ಕೋಪದಲಿ
ನರ ಮುರಾಂತಕರಿದಿರಿನಲಿ ಮದ
ಕರಿಯ ಬಿಟ್ಟನು ಶಕ್ರನಾತನ
ಬಿರುದ ಸಂಭಾವಿಸಿದರಭ್ರದ ಸೂತ ಮಾಗಧರು ೪೩

ನಮುಚಿ ಮಸ್ತಕಶೂಲ ಬಲ ಸಂ
ತಮ ಸುಭಾಸ್ಕರ ಜಂಭ ಭಂಜ ವಿ
ಕ್ರಮ ಮಹಾಂಬುಧಿ ಕುಂಭಸಂಭವ ವೃತ್ರ ಗಿರಿವಜ್ರ
ಕಮಲಭವ ಹರ ವಿಷ್ಣು ಹೊರೆಗಾ
ದಮಿತ ಸುರಗಣ ಮೌಳಿಸುಣಿ ಸಂ
ಕ್ರಮಣ ಚತುರ ಪದಾಬ್ಜನೆಂದುದು ವಂದಿ ಸಂದೋಹ ೪೪

ನೂಕಿದನು ಸುರಪತಿ ಗಜವನ
ವ್ಯಾಕುಲರಲೇ ಕೃಷ್ಣ ಪಾರ್ಥರಿ
ದೇಕೆ ನಿಮಗೀ ವಾಸಿ ವಾಸವ ಲೇಸು ಮರುಳುವುದು
ನಾಕ ನಿಳಯರು ತಂದ ಗೆಲವೇ
ಸಾಕು ಸೋಲುವರಲ್ಲ ನಿಮಗೆ ವಿ
ವೇಕವುಳ್ಳರೆ ತಿರುಗಿಯೆಂದನು ಹರಿಗೆ ಕಲಿಪಾರ್ಥ ೪೫

ಜನಪ ಕೇಳಾ ಸಮಯದೊಳು ವಾ
ಗ್ವನಿತೆಯರಸನು ಗಗನಮಾರ್ಗದೊ
ಳನಿಮಿಷಾಧಿಪನಲ್ಲಿಗೈತರೆ ಕಂಡು ಸುರನಿಕರ
ತನತನಗೆ ಭಾಳದಲಿ ನಿಜ ಕರ
ವನರುಹವ ಮುಗಿಯಿಸಿದರಿಂದ್ರಂ
ಗನುವರವ ಮಾಣಿಸಲು ಬೇಕೆಂದಿಳಿದನಬ್ಜಭವ ೪೬

ಮರುಳನೈ ನೀನಿವರನಾರೆಂ
ದರಿಯಲಾ ನಾರಾಯಣನು ಮುರ
ಹರನು ನರನಲ್ಲಾ ಧನಂಜಯನಿವರು ಕಿರುಕುಳರೆ
ಮರುಳ ನೀನೆಂದಿಂದ್ರನಾನೆಯ
ತಿರುಹಿದನು ಪರಮೇಷ್ಠಿಯಿತ್ತಲು
ಧರಣಿಪತಿ ಕೇಳನಲ ಕೇಳಿಯನಾ ವನಾಂತದಲಿ ೪೭

ಜಂಬು ಚೂತ ಪಲಾಶ ವಟ ದಾ
ಳಿಂಬ ಬಿಲ್ವ ತಮಾಲ ಚಂಪಕ
ನಿಂಬ ಬಕುಳ ಕಪಿತ್ಥ ಕುಟಜವಶೋಕ ಪುನ್ನಾಗ
ತುಂಬುರರಳಿ ಲವಂಗ ಪೂಗ ಕ
ದಂಬ ಗುಗ್ಗುಲ ಸಾಲ ತಿಲಕೌ
ದುಂಬರಾದಿ ದ್ರುಮ ಕುಲವನಾಲಿಂಗಿಸಿತು ವಹ್ನಿ ೪೮

ಸುಳಿಸುಳಿದು ಶಶಿಕಾಂತಮಯದ
ಗ್ಗಳದ ವೇದಿಕೆಗಳಲಿ ನೀಲದ
ನೆಲೆಯ ಚೌಕಿಗೆಗಳಲಿ ಮಂಟಪದಲಿ ಲತಾವಳಿಯ
ಲಲಿತ ಸೌಧದ ಚಾರು ಚಿತ್ರಾ
ವಳಿಯ ಮೇಲ್ಕಟ್ಟುಗಳ ಭವನಂ
ಗಳಲಿ ಬಿಟ್ಟುದು ಕೂಡೆ ಪಾಳಯ ವಹ್ನಿಭೂಪತಿಯ ೪೯

ಕುರುಳ ತುಂಬಿಯು ತನಿಗೆದರಿ ಮುಖ
ಸರಸಿಜವ ಚುಂಬಿಸಿ ತಮಾಲದ
ತುರುಬ ಹಿಡಿದಧರ ಪ್ರವಾಳದ ರಸವ ನೆರೆಸವಿದು
ಉರು ಪಯೋಧರ ಬಿಲ್ವವನು ಹೊ
ಯ್ದೊರಸಿ ಕದಳಿಯ ನುಣ್ದೊಡೆಯ ನಿ
ಟ್ಟೊರಸಿ ರಮಿಸಿತು ವನಸಿರಿಯ ಪಿಪ್ಪಲ ದಳಾಂಗದಲಿ ೫೦

ಧರಣಿಪತಿ ಕೇಳ್ ಶರಭಮೃಗಪತಿ
ಕರಿ ಕಳಭ ಶಾರ್ದೂಲ ಸೂಕರ
ಕರಡಿ ಕಾಸರಶಲ ಮೃಗಾವನ ಖಡ್ಗ ಗೋಮಾಯು
ಎರಳೆ ಮೊಲ ಸಾರಂಗ ವಾನರ
ನುರು ಕುರಂಗ ಪ್ರಮುಖ ಮೃಗಕುಲ
ವುರುಬಿ ಬಿದ್ದುದು ಧಳ್ಧುರಿಯ ಬೆಳ್ಧಾರವಲೆಗಳಲಿ ೫೧

ಶುಕ ಮರಾಳ ಮಯೂರ ಟಿಟ್ಟಿಭ
ಪಿಕ ಚಕೋರ ಕಪೋತ ವಾಯಸ
ಬಕ ಪದಾಯುಧ ಚಕ್ರವಾಕ ಕಳಿಂಗ ಕಲವಿಂಕ
ಕುಕಿಲ ಸಾರಸ ಕಾಕರಿಪು ಚಾ
ತಕ ಭರದ್ವಾಜಾದಿ ಪಕ್ಷಿ
ಪ್ರಕರ ಬಿದ್ದುದು ಬಿಗಿದ ಕೇಸುರಿ ಕಣ್ಣಿವಲೆಗಳಲಿ ೫೨

ಹರಡೆ ಗೀಜಗ ಮರಗೊಡೆಲೆ ಕಾ
ಬುರುಲೆ ಲಾವುಗೆ ಗೌಜು ಪಾರಿವ
ನಿರಿಲೆ ಸಾಳುವ ಚಿಲಿಮಿಲಿಗ ಚೆಂಬೋತ ಮೀನ್ಬುಲಿಗ
ಮರಕುಟಿಗ ಕಬ್ಬಕ್ಕಿ ಕೊಟ್ಟುಗ
ವರಲೆ ಕೊಂಚೆ ಕಪಿಂಜ ಗಿಂಚಲು
ಗರಿಗ ಮೊದಲಾದಖಿಳ ಖಗಕುಲ ಬಿದ್ದುದುರಿಯೊಳಗೆ ೫೩

ಝಳಕೆ ತಿಳಿಗೊಳದುದಕ ಕಾದು
ಚ್ಚಳಿಸಿದವು ತನಿಗುದಿದು ಮತ್ಸ್ಯಾ
ವಳಿಗಳಂಬುಜದೆಸಳು ಸೀದವು ತುಂಬಿಗಳು ಸಹಿತ
ಹಿಳಿದು ಸಿಡಿದವು ಚಾರು ಚಂದ್ರೋ
ತ್ಪಳರಚಿತ ಸೋಪಾನ ರತುನಾ
ವಳಿಯ ರಾಶಿಗಳಿದ್ದಿಲಾದವು ಬಿದ್ದ ಕಿಡಿಗಳಲಿ ೫೪

ಇಟ್ಟಣಿಸಿ ಛಿಟಿಛಿಟಿಸಿ ಶಿಖಿ ಪುಟ
ವಿಟ್ಟುದೊಣಗಿಲು ಹೊದರಿನಲಿ ಮಿಗೆ
ತೊಟ್ಟ ಕಬ್ಬೊಗೆ ಝುಗೆಯ ಹೊರಳಿಯ ಕಿಡಿಯ ಗಡಣದಲಿ
ಹುಟ್ಟಿದುರಿ ಹೆಮ್ಮರನ ಸುತ್ತಲು
ಕಟ್ಟಿತಲ್ಲಿಯ ತೊಡಕಿನಲಿ ಭುಗಿ
ಲಿಟ್ಟು ಕವಿದುದು ತುದಿಗೆ ಬಹು ಶಾಖೋಪಶಾಖೆಗಳ ೫೫

ಹೊಗೆಯ ಹಬ್ಬುಗೆ ಸತ್ಯಲೋಕವ
ನುಗಿದುದುರಿನಾಲಗೆಯ ಗರವೊ
ಟ್ಟಗೆಯ ತೊಳಲಿಕೆ ತೆರಳಿಚಿತು ತೆತ್ತೀಸು ಕೋಟಿಗಳ
ಹಗಲಗಡಿತಕೆ ಹೊಕ್ಕುದೋ ಕಡೆ
ಮುಗಿಲ ಕಾಣೆನು ದಿವವನೆತ್ತಣ
ಗಗನಮಣಿ ನಕ್ಷತ್ರ ಚಂದ್ರಮರರಸ ಕೇಳೆಂದ ೫೬

ಛಿಳಿ ಛಿಳಿಲು ಛಿಳಿ ರವದ ಘುಳು ಘುಳು
ಘುಳು ಘುಳ ಧ್ವನಿಮಯದಿ ಕಪಿಗಳ
ಕಿಳಿಕಿಳಾಯುತ ರವದಿ ಮೃಗ ಸಂಕುಳದ ಕಳ ಕಳದಿ
ಹಿಳಿದುರಿವ ಹೆಬ್ಬಿದಿರ ಗಂಟಿನ
ಠಳಠಳತ್ಕಾರದಿ ದಿಶಾ ಮಂ
ಡಳದ ಮೂಲೆಗಳೊಡೆದುದದ್ಭುತವಾಯ್ತು ವನದಹನ ೫೭

ಅರಸ ಕೇಳೈ ಮುನ್ನ ವಿತಳಕೆ
ಗರುಡ ಭಯವಾಯ್ತೆಂದು ತಕ್ಷಕ
ನಿರಿಸಿದನು ನಿಜಸುತನನಮರೇಶ್ವರನನುಜ್ಞೆಯಲಿ
ಇರಲಿರಲು ಸುತರಾದರಾತಂ
ಗುರಗ ವಂಶದೊಳಶ್ವಸೇನಗೆ
ಹಿರಿದು ಹೆಚ್ಚಿತು ತಕ್ಷಕನ ಸಂತತಿ ವನಾಂತದಲಿ ೫೮

ಆ ಮಹಾ ವನವಹ್ನಿ ಭೂತ
ಸ್ತೋಮ ಸಂಹೃತಿ ಕರ್ಮ ಶೌರ್ಯೋ
ದ್ದಾಮವವಗಾಹಿಸುತ ಬರುತಿರೆ ಮುಂದೆ ಚೂಣಿಯಲಿ
ಧೂಮವಿಳಿದುದು ಹುತ್ತಿನಲಿ ನಿ
ಸ್ಸೀಮ ಜನಿತ ಜ್ವಾಲೆಗಳ ಝಳ
ವಾ ಮಹೋರಗಚಯವ ಚುಂಬಿಸಿತರಸ ಕೇಳೆಂದ ೫೯

ಹೂಸಿ ಹುತ್ತಿನ ಮಣ್ಣ ರಂಧ್ರಿಸಿ
ಕಾಸಿದವು ಫಣಿಕುಲವ ಮೇಣ್ದೊ
ಳ್ಳಾಸದಲಿ ಡಾವರಿಸಿದವು ಕಿಡಿ ಧೂತಧೂಮದಲಿ
ಆಸುರದ ಕಬ್ಬೊಗೆಯ ಕವಚದ
ಕೇಸುರಿಗಳೊಳ ಬಿದ್ದುದುರಿ ಹೊರ
ಸೂಸಿ ಹಿಡಿದವು ಹಾವುಗಳ ಬಲು ಹೊದರ ಹೊರಳಿಗಳ ೬೦

ಹೆಡೆಯ ಮಣಿಗಳ ಕಂಡು ಸೂಸಿದ
ಕಿಡಿಗಳಹಹಾಯೆನುತ ಶಿರಗಳ
ಕೊಡಹಿ ಮರುಗಿದರುರಗಿಯರು ಮರಿಗಳಿಗೆ ಮೈಚಾಚಿ
ಕಡು ಹೊಗೆಯ ಕೇಸುರಿಯ ಕಿಡಿಗಳ
ಗಡಣದಲಿ ಕೌರೆದ್ದು ಮೈಗಳ
ಕೊಡಹಿ ಬಿಸುಸುಯ್ಯುತ್ತ ಮುಗ್ಗಿದವಹಿಗಳುರಿಯೊಳಗೆ ೬೧

ಹುದಿದುರಿವ ಹುತ್ತಿನಲಿ ಕೂಳ್ಗುದಿ
ಗುದಿದು ಸರ್ಪಸ್ತೋಮ ಮಧ್ಯದೊ
ಳೊದೆದು ಹಾಯಿದನಶ್ವಸೇನನು ಗಗನ ಮಂಡಲಕೆ
ಕೆದರಿದವು ಕೆಂಗಿಡಿಗಳುರಿಯು
ಬ್ಬಿದುದು ಘುಳುಘುಳು ರಭಸ ಮಿಗೆ ಹೆ
ಚ್ಚಿದುದು ತಬ್ಬಿದುದೀತನನು ತಡವರಿಸಿ ಗಗನದಲಿ ೬೨

ಉರಿಯ ಗಂಟಲನೊದೆದು ಫಣಿ ಮಿ
ಕ್ಕುರವಣಿಸೆ ಹಾಹಾ ಧನಂಜಯ
ಹರಿವುತಿದೆ ಹಾವೊಂದು ಹೋದುದು ಬಾಯ ತುತ್ತೆನಗೆ
ತರಿಸಿಕೊಡು ಶರವೇಧೆಯನು ವಿ
ಸ್ತರಿಸು ವಹಿಲದೊಳೆನಲು ವೈಶ್ವಾ
ನರನ ಮಾತಿಗೆ ನಗುತ ಕೊಂಡನು ವಿಜಯ ಗಾಂಡಿವವ ೬೩

ಆವ ಶರಸಂಧಾನವೋ ಗಗ
ನಾವಲಂಬಿಯು ಕೊರಳನೆಚ್ಚನು
ಪಾವಕನ ಮಧ್ಯದಲಿ ಬಿದ್ದುದು ಮುಂಡವಹಿಪತಿಯ
ಜೀವವುಳಿದುದು ಶಿರದೊಳಾತಂ
ಗಾ ವಿಗಡ ಫಣಿ ನುಡಿದುದೆಲೆ ಗಾಂ
ಡೀವಿ ಮರೆಯುದಿರೆನ್ನ ಹಗೆಯಲಿ ಮರಣ ನಿನಗೆನುತ ೬೪

ಎಂದು ಗಗನದೊಳುಲಿದು ಫಣಿ ಶಿರ
ವಂದು ಪಾಯ್ದುದು ಧರೆಗೆ ರಾಧಾ
ನಂದನನ ಬತ್ತಳಿಕೆಯಲಿ ಶರವಾಗಿ ಜಗವರಿಯೆ
ಸಂದುದದು ಬಳಿಕಿತ್ತಲಿಂದ್ರನ
ನಂದನದ ಬೇಗೆಯಲಿ ಬದುಕಿತು
ಮಂದಪಾಲನ ಸುತಚತುಷ್ಟಯವರಸ ಕೇಳೆಂದ ೬೫

ಮೆಚ್ಚಿಸಿದವವು ವಹ್ನಿಸೂಕ್ತವ
ನುಚ್ಚರಿಸಿ ತಜ್ಜ್ವಲನ ಮುಖವನು
ಬಿಚ್ಚಿ ಬದುಕಿದವಾ ಮುನಿಯ ಸಂತಾನ ಪಕ್ಷಿಗಳು
ಹೆಚ್ಚಿದುರಿ ಹಬ್ಬುಗೆಯ ಹೊಯ್ಲಲಿ
ಬೆಚ್ಚಿ ಮಯನರ್ಜುನನ ಹೊಗಳಿದು
ಕಿಚ್ಚಿನಲಿ ಬದುಕಿದನು ಧರಣೀಪಾಲ ಕೇಳೆಂದ ೬೬

ಖಗ ಚತುಷ್ಟಯ ಮಯ ಸಹಿತವುರಿ
ಯುಗುಳಿತುಳಿದ ಸಮಸ್ತ ಭೂತಾ
ಳಿಗಳನಾಹುತಿಗೊಂಡನಗ್ನಿ ಧನಂಜಯಾಜ್ಞೆಯಲಿ
ಗಗನದಿಂದಿಳಿತಂದು ಸುರಪತಿ
ಮಗನ ಮನ್ನಿಸಿ ಕೊಟ್ಟನಗ್ಗದ
ಗಗನಮಣಿಗೆಣೆಯೆನಿಪ ಮಕುಟವನೊಲಿದು ಪಾರ್ಥಂಗೆ ೬೭

ಹರಿಗೆ ವಂದಿಸಿ ಮಗನನೊಲಿದಾ
ದರಿಸಿ ಮರಳಿದನಿಂದ್ರನಿತ್ತಲು
ಭರದಿನಿವರೈತಂದರಿಂದ್ರಪ್ರಸ್ಥ ಪುರವರಕೆ
ಧರಣಿಪತಿಗಾ ಖಾಂಡವದ ದ
ಳ್ಳುರಿಯ ಹೋಮದ ಹೊಸ ಕಥೆಯ ವಿ
ಸ್ತರಿಸಿ ಹೇಳಿದನಸುರರಿಪು ಭೀಮಾದಿಗಳು ನಲಿಯೆ ೬೮

ಧಾರುಣೀಶ್ವರರೈವರನು ಸುಕು
ಮಾರ ವರ್ಗವನಾ ಸುಭದ್ರಾ
ನಾರಿಯನು ಪಾಂಚಾಲೆಯನು ತತ್ಸಕಲ ಬಾಂಧವರ
ಸೂರಿಗಳ ಸಚಿವಾದಿ ನೃಪ ಪರಿ
ವಾರವನು ಪತಿಕರಿಸಿ ಬಂದನು
ದೊರಕಿಗೆ ಹರುಷದಲಿ ಗದುಗಿನ ವೀರನಾರಯಣ ೬೯

ಇತಿ ಶ್ರೀಮದಚಿಂತ್ಯಮಹಿಮ ಗದುಗು ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪುಷ್ಟವಚಃ ಷಟ್ಪದೀ ನಿಕಾಯ
ಶ್ರೀಮತ್ಕುಮಾರವ್ಯಾಸ ಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಆದಿಪರ್ವ ಸಮಾಪ್ತಮಾದುದು

ಸಭಾಪರ್ವ

ಮೊದಲನೆಯ ಸಂಧಿ

ಸೂ. ಸಭೆಯೊಳೋಲಗದೊಳು ವಿರಿಂಚಿ
ಪ್ರಭವನನುಮತದಿಂದ ಧರಣೀ
ವಿಭು ಮಹಾಕ್ರತು ರಾಜಸೂಯವನೊಲಿದು ಕೈಕೊಂಡ

ಕೇಳು ಜನಮೇಜಯ ಧರಿತ್ರೀ
ಪಾಲ ಖಾಂಡವ ವನದ ವಹ್ನಿ
ಜ್ವಾಲೆ ತೆಗೆದುದು ಕೂಡೆ ಹೊಗೆದುದು ಹೊದರ ಹೊಸಮೆಳೆಯ
ಮೇಲುಗಾಳಗದುಬ್ಬಿನಲಿ ಸಿರಿ
ಲೋಲ ಸಹಿತರ್ಜುನನು ವಿಕ್ರಮ
ದೇಳಿಗೆಯ ಪರಿತೋಷದಲಿ ತಿರುಗಿದನು ಪಟ್ಟಣಕೆ ೧

ದೂತರೈದಿದರಿವರ ಸೂರೆಯ
ಕೈತವಕಿಗರು ಕೃತಕ ವಾರ್ತಾ
ಭೀತಪುರಜನ ಮುಖದ ದುಗುಡದ ದಡ್ಡಿಗಳನುಗಿದು
ಬೀತುದಿಂದ್ರನ ಬಲುಹು ವಿಗಡನ
ವೀತಿಹೋತ್ರನ ವಿಲಗ ತಿದ್ದಿ ವಿ
ಧೂತರಿಪುಬಲ ಬಂದನಿದೆಯೆಂದರು ಮಹೀಪತಿಗೆ ೨

ಹೂತುದರಸನ ಹರುಷಲತೆ ಪುರು
ಹೂತ ವಿಜಯದ ವಿಜಯ ವಾರ್ತಾ
ಶ್ರೋತ್ರ ಸುಖಸಂಪ್ರೀತಿ ನಯನ ಜಲಾಭಿಷೇಕದಲಿ
ಮಾತು ಹಿಂಚಿತು ಮುಂಚಿದುದು ನಯ
ನಾತಿಥಿವ್ರಜ ಮುಸುಕಿತಸುರ ವಿ
ಘಾತಿ ಪಾರ್ಥನನನಿಲಸುತ ನಕುಲಾದಿ ಬಾಂಧವರ ೩

ತಳಿತ ಗುಡಿಗಳು ಸಾಲ ಕಲಶದ
ನಿಳಯ ನಿಳಯದ ಬೀದಿ ಬೀದಿಯ
ತಳಿರ ದೋರಣದೋರಣದ ನವ ಮಕರತೋರಣದ
ತಳಿಗೆ ತಂಬುಲದಾರತಿಯ ಮಂ
ಗಳಿತ ರಭಸದೊಳಖಿಳ ರಾಜಾ
ವಳಿಗಳೊಸಗೆಯೊಳಿವರು ಹೊಕ್ಕರು ರಾಜಮಂದಿರವ ೪

ಹಿರಿಯರಂಘ್ರಿದ್ವಯಕೆ ಮಣಿದರು
ಕಿರಿಯರುಚಿತ ಕ್ಷೇಮ ಕುಶಲದಿ
ಪರಿ ರಚಿತ ಪರಿರಂಭ ಮಧುರ ವಚೋ ವಿಳಾಸದಲಿ
ಅರಸನಿವರನು ಮನ್ನಿಸಿದನಾ
ದರಿಸಿತನ್ಯೋನ್ಯಾನುರಾಗ
ಸ್ಫುರಿತ ತೇಜೋಭಾವ ವಿಭ್ರಮ ಭೂಪತಿವ್ರಾತ ೫

ಅರಸ ಕೇಳೈ ಬಳಿಕ ಹರಿ ನಿಜ
ಪುರಕೆ ಬಿಜಯಂಗೆಯ್ವ ವಾರ್ತೆಯ
ನೊರೆದನವನೀಪತಿಗೆ ಭೀಮ ಧನಂಜಯಾದ್ಯರಿಗೆ
ಅರಸಿಯರಿಗಭಿಮನ್ಯು ಧರ್ಮಜ
ನರ ವೃಕೋದರಸೂನು ಮೊದಲಾ
ಗಿರೆ ಸಮಸ್ತಜನಂಗಳನು ಮನ್ನಿಸಿದನುಚಿತದಲಿ ೬

ವರಮುಹೂರ್ತದೊಳಮೃತ ಯೋಗೋ
ತ್ಕರ ಶುಭಗ್ರಹ ದೃಷ್ಟಿಯಲಿ ಹಿಮ
ಕರ ಶುಭಾವಸ್ಥೆಯಲಿ ಕೇಂದ್ರಸ್ಥಾನ ಗುರುವಿನಲಿ
ಧರಣಿಸುರರಾಶೀರ್ವಚನ ವಿ
ಸ್ತರಣ ದಧಿ ದೂರ್ವಾಕ್ಷತೆಗಳು
ಬ್ಬರದ ವಾದ್ಯ ಗಡಾವಣೆಯಲಸುರಾರಿ ಹೊರವಂಟ ೭

ಕರಯುಗದ ಚಮ್ಮಟಿಕೆ ವಾಘೆಯ
ಲರಸ ರಥವೇರಿದನು ಮುಕ್ತಾ
ಭರದ ಭಾರದ ಸತ್ತಿಗೆಯ ಪಲ್ಲವಿಸಿದನು ಭೀಮ
ಹರಿಯುಭಯ ಪಾರ್ಶ್ವದಲಿ ಸಿತ ಚಾ
ಮರವ ಚಿಮ್ಮಿದನರ್ಜುನನು ಬಂ
ಧುರದ ಹಡಪದ ಹೆಗಲಲೈದಿದರರ್ಜುನಾನುಜರು ೮

ಪೌರಜನ ಪುರಜನ ನೃಪಾಲ ಕು
ಮಾರ ಸಚಿವ ಪಸಾಯ್ತ ಭಟ ಪರಿ
ವಾರ ಧೌಮ್ಯಪ್ರಮುಖ ಸೂರಿ ಸಮಾಜರೊಗ್ಗಿನಲಿ
ತೇರ ಬಳಿವಿಡಿದೈದಿದರು ಮುರ
ವೈರಿ ವಿರಹ ವಿಧೂತ ವದನಾಂ
ಭೋರುಹರ ಸಂತೈಸಿ ಬೀಳ್ಕೊಟ್ಟನು ಕೃಪಾಜಲಧಿ ೯

ಅರಿನೃಪರು ಕುಹಕಿಗಳು ನೀವೇ
ಸರಸ ಹೃದಯರಧರ್ಮಶೀಲರು
ಪರರು ನೀವತಿ ಧರ್ಮನಿಷ್ಠರು ಹಾನಿಯುಂಟದಕೆ
ಅರಸನಾರೋಗಣೆ ವಿಹಾರದೊ
ಳಿರುಳು ಹಗಲು ಮೃಗವ್ಯಸನದೆ
ಚ್ಚರಿನೊಳಿಹುದೆಂದನಿಬರನು ಬೀಳ್ಕೊಟ್ಟನಸುರಾರಿ ೧೦

ನಾಲಗೆಗಳಸುರಾರಿ ಗುಣ ನಾ
ಮಾಳಿಯಲಿ ತುರುಗಿದವು ಕಂಗಳು
ನೀಲಮೇಘಶ್ಯಾಮನಲಿ ಬೆಚ್ಚವು ವಿಹಾರದಲಿ
ಬಾಲಕೇಳೀ ಕಥನ ಸುಧೆಯೊಳ
ಗಾಳಿ ಮುಳುಗುತ ಕಳುಹುತನಿಬರು
ಸಾಲಭಂಜಿಕೆಯಂದವಾದರು ಕೃಷ್ಣವಿರಹದಲಿ ೧೧

ಕಳುಹಿ ಕಂಗಳು ಮರಳಿದವು ಮನ
ಕಳುಹದಾ ದ್ವಾರಾವತಿಗೆ ಮಂ
ಗಳ ಮಹೋತ್ಸವದೊಸಗೆ ನುಡಿಯಲಿ ಹೊಕ್ಕನಸುರಾರಿ
ಬಳಿಕಿವರು ನಿಜ ರಾಜಭವನ
ಸ್ಥಳಕೆ ಬಂದರು ಸೌಮನಸ್ಯದ
ಲೀಳೆಯ ಪಾಲಿಸುತಿರ್ದರವನೀಪಾಲ ಕೇಳೆಂದ ೧೨

ಮುರಹರನ ನೇಮದಲಿ ಮಯ ವಿ
ಸ್ತರಿಸಿದನು ಪದಿನಾಲ್ಕು ತಿಂಗಳು
ವರ ಸಭಾಮಂಟಪವನನಿಬರಿಗಿವ ಕೃತಜ್ಞನಲೆ
ಕಿರಣ ಲಹರಿಯ ವಿವಿಧ ರತ್ನೋ
ತ್ಕರದ ರಚನಾಶಿಲ್ಪವಿದು ದೇ
ವರಿಗಸಾಧ್ಯವು ಶಿವಶಿವಾಯೆನೆ ಮೆರೆದುದಾಸ್ಥಾನ ೧೩

ಹತ್ತು ಸಾವಿರ ಕೈ ಪ್ರಮಾಣದ
ಸುತ್ತುವಳಯದ ಮಣಿಯ ಶಿಲೆಗಳ
ತತ್ತವಣೆಗಳ ತೆಕ್ಕೆವೆಳಗಿನ ಲಳಿಯ ಲಹರಿಗಳ
ಸುತ್ತುವಳಯದ ಪದ್ಮರಾಗದ
ಭಿತ್ತಿಗಳ ವೈಡೂರ್ಯ ಶಿಲೆಗಳ
ಮತ್ತವಾರಣ ವರ ವಿಧಾನದಲೆಸೆದುದಾಸ್ಥಾನ ೧೪

ಕರೆಸಿದನು ಮಯನೆಂಟು ಸಾವಿರ
ಸರಿಗ ರಕ್ಕಸ ಕಿಂಕರರ ನಿಜ
ಶಿರದೊಳಾಂತರು ತಂದರಿಂದ್ರಪ್ರಸ್ಥಪುರವರಕೆ
ಅರಸ ಕಾಣಿಸಿಕೊಂಡನದನಾ
ದರಿಸಿದನು ಭೀಮಂಗೆ ಭಾರಿಯ
ವರ ಗದಾದಂಡವನು ಕಾಣಿಕೆಯಿತ್ತು ಪೊಡವಂಟ ೧೫

ಇದು ಪುರಾತನ ಸಗರ ವಂಶಾ
ಭ್ಯುದಯ ದುರ್ಜಯ ಯೌವನಾಶ್ವನ
ಗದೆ ಕೃತಾಂತನ ಕರದ ದಂಡವನಂಡಲೆವ ಬಲದ
ಮದದಲೊಪ್ಪುವುದೆನುತ ಮಯನತಿ
ಮುದದಿ ಬಳಿಕಾ ದೇವದತ್ತಾ
ಖ್ಯದ ಮಹಾ ಶಂಖವನು ಪಾರ್ಥಗೆ ಕೊಟ್ಟು ಕೈಮುಗಿದ ೧೬

ಒಸಗೆ ಮೆರೆದುದು ಮಯನ ಮಿಗೆ ಮ
ನ್ನಿಸಿದನವನಿಪನಂಗಚಿತ್ತದೊ
ಳಸುರ ಕಿಂಕರರನಿಬರನು ಸನ್ಮಾನ ದಾನದಲಿ
ಒಸೆದು ಕಳುಹಿದನಾತನನು ದೆಸೆ
ದೆಸೆಯ ಯಾಚಕ ನಿಕರ ನೂಕಿತು
ಮುಸುಕಿತೈ ಧರ್ಮಜನ ಕೀರ್ತಿಯು ಝಾಡಿ ಮೂಜಗವ ೧೭

ದಿವಸ ದಿವಸದೊಳುಂಡುದವನೀ
ದಿವಿಜ ಸಂತತಿ ಹತ್ತು ಸಾವಿರ
ಪವರನೇನೆಂದೆಣಿಸುವೆನು ಮಾರ್ಗಣ ಮಹೋದಧಿಯ
ವಿವಿಧ ರತ್ನಾಭರಣ ಕಾಂಚನ
ನವ ದುಕೂಲದ ದಿಂಡಿನಲಿ ಬುಧ
ನಿವಹ ದಣಿದುದನಂತ ಕೃಪಣಾನಾಥ ಜನಸಹಿತ ೧೮

ಆ ಮಹೋತ್ಸವವೇಳು ದಿನವಭಿ
ರಾಮರಂಜಿತವಾಯ್ತು ಶುಭದಿನ
ರಾಮಣೀಯಕ ಲಗ್ನದಲಿ ಹೊಕ್ಕನು ಮಹಾಸಭೆಯ
ಭೂಮಿಪಾಲರನಂತ ಸುಜನ
ಸ್ತೋಮವನುಜರಮರ್ತ್ಯರೆನಿಪ ಸ
ನಾಮರಿದ್ದರು ರಾಯನೆಡ ಬಲವಂಕದಿದಿರಿನಲಿ ೧೯

ಹೊಳೆ ಹೊಳೆದುದಾಸ್ಥಾನ ಕಾಂತಾ
ವಳಿಯ ಕಂಗಳ ಬೆಳಕಿನಲಿ ತನಿ
ಮುಳುಗಿತೋಲಗ ಲಲಿತತರಸ ಲಾವಣ್ಯಲಹರಿಯಲಿ
ವಿಲಸದಖಿಳಾಭರಣ ರತ್ನಾ
ವಳಿಯ ರಶ್ಮಿಯಲಡಿಗಡಿಗೆ ಪ್ರ
ಜ್ವಲಿಸಿತಾ ಸಭೆ ದೀಪ್ತಿಮಯ ವಿವಿಧಾನುಭಾವದಲಿ ೨೦

ಮೇಳದಲಿ ಗಂಧರ್ವರಿಪ್ಪ
ತ್ತೇಳು ತುಂಬುರ ಸಹಿತ ಶುದ್ಧದ
ಸಾಳಗದ ಸಂಕೀರ್ಣ ದೇಶಿಯ ವಿವಿಧ ರಚನೆಗಳ
ಬಾಲೆಯರ ಸುರಗಣಿಕೆಯರ ಮುಖ
ಚಾಲೆಯರ ಸಂಗೀತ ತಾಳದ
ತೂಳುವರೆ ತುಂಬಿದುದು ಕುಸುಮಾಯುಧನ ಕಳವಳವ ೨೧

ಆ ಮಹಾಸಭೆಯಲಿ ಯುಧಿಷ್ಠಿರ
ಭೂಮಿಪತಿ ದೂರದಲಿ ಕಂಡನು
ತಾಮರಸದಳ ನಯನ ಸಂನಿಭ ಭಾವ ಭಾವಿತನ
ಹಾ ಮಹಾದೇವೆತ್ತಣದುಭುತ
ಧಾಮವಿದು ದಿನಮಣಿಯ ತೇಜ
ಸ್ತೋಮವೆರಡರ ಧಾತುಯೆನುತೀಕ್ಷಿಸಿದರಾ ದೆಸೆಯ ೨೨

ಲಲಿತತೇಜಃಪುಂಜ ಮಿಗೆ ಥಳ
ಥಳಿಸಿತತಿ ದೂರದಲಿ ಬೆಳಗಿನ
ಗೊಳಸನುಡಿದಂತಾದುದಾಗಳೆ ತೋರಿತಾಕಾರ
ತಳಿತುದವಯವ ಶುದ್ಧವರ್ಣ
ಸ್ಥಳವು ನಿಮಿಷಕೆ ಮುನಿವರಾಕೃತಿ
ಹೊಳೆದುದಾಕ್ಷಣವೀತ ನಾರದನೆಂದುದಖಿಳಜನ ೨೩

ದಣಿಯದಾತನ ಬೆರಳು ನಾರಾ
ಯಣ ರವದ ವೀಣೆಯಲಿ ಹೃದಯಾಂ
ಗಣದ ಸೀಮೆಂಗೆ ಬಿಡಯುವಾಗದು ಕೃಷ್ಣಪದ ಕೇಳಿ
ಪ್ರಣವರೂಪದ ಭಾವಶುದ್ಧಿಯ
ಕಣಿ ಮುರಾರಿಯ ತನ್ಮಯದ ನಿ
ರ್ಗುಣ ಮುನೀಶ್ವರನಿಳಿದನಿಂದ್ರಪ್ರಸ್ಥಪುರವರಕೆ ೨೪

ಬಂದನರಮನೆಗಾ ಮುನಿಯುನಭಿ
ವಂದಿಸಿದುದಾಸ್ಥಾನವಿದಿರಲಿ
ನಿಂದು ಬಿಜಯಂಗೈಸಿ ತಂದರು ಸಿಂಹವಿಷ್ಟರಕೆ
ಸಂದ ಮಧುಪರ್ಕಾದಿ ಸತ್ಕೃತಿ
ಯಿಂದ ಪೂಜಿಸಿ ವಿನಯ ಮಿಗೆ ನಗು
ತೆಂದನವನೀಪಾಲನುಚಿತೋಕ್ತಿಯಲಿ ನಾರದನ ೨೫

ಕುಶಲವೇ ನಿಮ್ಮಂಘ್ರಿಗಳಿಗಿಂ
ದೊಸಗೆಯಾಯಿತು ನಮಗೆ ದರುಶನ
ವಸಮ ಸಂಸ್ಕೃತಿ ವಹ್ನಿದಗ್ಧರಿಗಮೃತ ವರ್ಷವಲೆ
ಪಶುಪತಿಯ ಪರಮೇಷ್ಠಿಯಾ ಮುರ
ದ್ವಿಷನ ಸಾಮರ್ಥ್ಯದ ಸಗಾಢದ
ದೆಸಕ ನಿಮಗುಂಟೆಂದು ಕೊಂಡಾಡಿದನು ನಾರದನ ೨೬

ಕುಶಲವೆಮಗಿಂದೈದೆ ನೀನೀ
ವಸುಮತೀವಧುಗೊಳ್ಳಿದನೆ ಶೋ
ಭಿಸುವುದೇ ಭವದಾಜ್ಞೆಯಲಿ ವರ್ಣಾಶ್ರಮಾಚಾರ
ದೆಸೆ ದೆಸೆಗಳಮಳಾಗ್ನಿಹೋತ್ರ
ಪ್ರಸರಧೂಮಧ್ವಜಗಳೇ ನಿಂ
ದಿಸರಲೇ ದುರ್ಜನರು ಸುಜನರನೆಂದನಾ ಮುನಿಪ ೨೭

ಅರ್ಥದಿಂ ಧರ್ಮವನು ಧರ್ಮದಿ
ನರ್ಥವನು ಧರ್ಮಾರ್ಥವೆರಡನು
ವ್ಯರ್ಥಕಾಮದಲಳಿಯಲೇ ರಾಜ್ಯಾಭಿಲಾಷೆಯಲಿ
ಅರ್ಥಸಾಧನ ಧರ್ಮಸಾಧನ
ವರ್ಥ ಧರ್ಮದಲುಭಯ ಲೋಕಕ
ನರ್ಥ ಸಾಧನ ಕಾಮವೆಂದನು ಮುನಿ ನೃಪಾಲಂಗೆ ೨೮

ಮಾನ್ಯರನು ಧಿಕ್ಕರಿಸೆಯೆಲೆಯುವ
ಮಾನ್ಯರನು ಮನ್ನಿಸೆಯಲೇ ಸಂ
ಮಾನ್ಯರನು ಸತ್ಕರಿಸುವಾ ಹಳಿವಾ ವಿಕಾರಿಗಳ
ಅನ್ಯರನು ನಿನ್ನವರ ಮಾಡಿಯ
ನನ್ಯರನು ಬಾಹಿರರ ಮಾಡಿವ
ದಾನ್ಯರನು ನಿಗ್ರಹಿಸೆಯೆಲೆ ಭೂಪಾಲ ಕೇಳೆಂದ ೨೯

ಖಳರ ಖಂಡಿಸುವಾ ಮದ ವ್ಯಾ
ಕುಲರ ದಂಡಿಸುವಾ ದರಿದ್ರರ
ನೊಲಿದು ರಕ್ಷಿಸುವಾ ಸುಮಾಯಾವಿಗಳ ಶಿಕ್ಷಿಸುವ
ಕುಲಯುತರ ಕೊಂಡಾಡುವಾ ರಿಪು
ಬಲದ ತಲೆ ಚೆಂಡಾಡುವಾ ದು
ರ್ಬಲರನತಿ ಬಾಧಿಸೆಯಲೇ ಭೂಪಾಲ ಕೇಳೆಂದ ೩೦

ಜಾತಿ ಸಂಕರವಿಲ್ಲಲೇ ಜನ
ಜಾತದಲಿ ಹೀನೋತ್ತಮರು ನಿ
ರ್ಣೀತರೇ ನಿಜಮಾರ್ಗದಲಿ ಕುಲವಿಹಿತ ಧರ್ಮದಲಿ
ಖ್ಯಾತರೇ ಸತ್ಪುರುಷರಧಿಕ
ದ್ಯೂತ ಕೇಳಿಗಳಿಲ್ಲಲೇ ಮೃಗ
ಯಾತಿರೇಕವ್ಯಸನ ಕಿರಿದೇ ರಾಯ ನಿನಗೆಂದ ೩೧

ಗಸಣಿಯಿಲ್ಲಲೆ ನಿನಗೆ ಸಪ್ತ
ವ್ಯಸನದಲಿ ನಿನ್ನನುಜ ತನುಜರ
ಮುಸುಡಧರ್ಮದಲಿರದಲೇ ವೈದಿಕ ವಿಧಾನದಲಿ
ಸಸಿನವೇ ನಿನ್ನರಿತ ಖಳರಿಗೆ
ಹುಸಿಕರಿಗೆ ಡಂಬಕರಿಗಜ್ಞರಿ
ಗುಸುರುವಾ ನಿನ್ನಂತರಂಗವನೆಂದನಾ ಮುನಿಪ ೩೨

ಹುರುಡಿಗರನೇಕಾಂತದೊಳಗಾ
ದರಿಸುವರು ಭೇದಕರ ಬುದ್ಧಿಗೆ
ತೆರಹುಗೊಡುವರು ಕುಟಿಲರಿಗೆ ವಿಶ್ವಾಸ ಹೀನರಿಗೆ
ಮರುಳುಗೊಂಬರು ಖೂಳರಿಗೆ ಭಂ
ಡರಿಗೆ ತೆರುವರು ಧನವನೀ ಧರೆ
ಯರಸುಗಳಿಗಿದು ಸಹಜ ನಿನ್ನಂತಸ್ಥವೇನೆಂದ ೩೩

ಒಳಗೆ ಕುಜನರು ಹೊರಗೆ ಧರಣೀ
ವಳೆಯ ಮಾನ್ಯರು ಛತ್ರ ಚಮರದ
ನೆಳಲು ಖೂಳರಿಗಾತಪದ ಬಲುಬೇಗೆ ಬುಧಜನಕೆ
ಒಳಗೆ ರಾಜದ್ರೋಹಿಗಳು ಹೊರ
ವಳಯದಲಿ ಪತಿಕಾರ್ಯ ನಿಷ್ಠರು
ಬಳಸಿಹುದು ನೃಪಚರಿತ ನಿನ್ನಂತಸ್ಥವೇನೆಂದ ೩೪

ಖೂಳರೊಡನೆ ವಿನೋದ ಭಂಡರೊ
ಳಾಳಿ ಸ್ವಾಮಿದ್ರೋಹರೊಡನೆ ಸ
ಮೇಳ ನಂಬುಗೆ ಡಂಭರೊಡನೆ ವಿಕಾರಿಯೊಡನಾಟ
ಸೂಳೆಯರು ಸಮಜೀವಿಗಳು ಕುಲ
ಬಾಲಕಿಯರೋಗಡಿಕೆಯವರು ನೃ
ಪಾಲ ಜನಕಿದು ಸಹಜ ನಿನ್ನಂತಸ್ಥವೇನೆಂದ ೩೫

ಆರು ಗುಣದೊಳುಪಾಯ ನಾಲ್ಕರೊ
ಳೇರಿಹುದೆ ಮನ ರಾಜಧರ್ಮದ
ಮೂರು ವರ್ಗದೊಳೆಚ್ಚರುಂಟೇ ನಯವಿಧಾನದಲಿ
ಮೂರು ಶಕ್ತಿಗಳೊಳಗೆ ಮನ ಬೇ
ರೂರಿಹುದೆ ಸಪ್ತಾಂಗದಲಿ ವೈ
ದೋರಿಹೈ ಬೇಸರೆಯೆಲೇ ಭೂಪಾಲ ನೀನೆಂದ ೩೬

ಪ್ರಜೆಗಳನುರಾಗಿಗಳೆ ಸುಭಟ
ವ್ರಜಕೆ ಜೀವಿತ ಸಂದಿಹುದೆ ವರ
ಸುಜನರಿಗೆ ಸಂತೋಷವೇ ಮಧುರೋಕ್ತಿ ರಚನೆಯಲಿ
ವಿಜಯ ಭೀಮರು ಯಮಳರಿವರ
ಗ್ರಜರೊಳನುಜರಭಿನ್ನರೇ ಗಜ
ಬಜಿಕೆಯಂತಃಪುರದೊಳಿಲ್ಲಲೆ ರಾಯ ಕೇಳೆಂದ ೩೭

ವಿಹಿತ ಕಾಲದ ಮೇಲೆ ಸಂಧಿಯ
ನಹಿತರೊಳು ವಿರಚಿಸುವ ಮೇಣ್ವಿ
ಗ್ರಹದ ಕಾಲಕೆ ವಿಗಡಿಸುವುದೆಂಬರಸು ನೀತಿಯಲಿ
ವಿಹಿತವೇ ಮತಿ ವೈರಿ ರಾಯರ
ವಿಹರಣವನವರಾಳು ಕುದುರೆಯ
ಬಹಳತೆಯನಲ್ಪತೆಯನರಿವೈ ರಾಯ ನೀನೆಂದ ೩೮

ಒಂದರಾಯಕೆ ಬೀಯ ಸರಿ ಮ
ತ್ತೊಂದು ಕಡೆಯಲಿ ಹೀನ ಫಲವಿ
ನ್ನೊಂದು ಕಾರ್ಯದುಪೇಕ್ಷತೆಗೆ ಮೊದಲಿಲ್ಲ ಕಡೆಯಿಲ್ಲ
ಒಂದು ದುರ್ಘಟ ದೈವ ಸಾಧಿತ
ವೊಂದು ಶಂಕಿತ ಫಲವೆನಿಪ್ಪವ
ಹಿಂದುಗಳಿವೈ ಮಂತ್ರದಲಿ ಭೂಪಾಲ ಕೇಳೆಂದ ೩೯

ನೆನೆದ ಮಂತ್ರವ ನಿನ್ನೊಳಾಲೋ
ಚನೆಯ ನಿಶ್ಚಯವಿಲ್ಲದಿರಲೊ
ಬ್ಬನಲಿ ಮೇಣ್ ಹಲಬರಲಿ ಜಡರಲಿ ಮತಿ ವಿಹೀನರಲಿ
ಮನ ಬರಡರಲಿ ಸಲೆ ವಿಧಾವಂ
ತನಲಿ ಮಂತ್ರಾಲೋಚನೆಯ ಸಂ
ಜನಿಸಿ ಹರಹಿನೊಳಳಿಯೆಲೇ ಭೂಪಾಲ ಕೇಳೆಂದ ೪೦

ಕಿರಿದುಪೇಕ್ಷೆಯ ಬಹಳ ಫಲವನು
ಹೊರೆವುದಿದು ಮೇಣಲ್ಪ ಭೇದಕೆ
ಮುರಿವುದಿದು ವಿಕ್ರಮಕೆ ವಶವಿದು ನೀತಿಸಾಧ್ಯವಿದು
ಹರಿವುದಿದು ನಯ ಶಕ್ತಿಗೆಂಬುದ
ನರಿದು ನಡೆವೈ ರಾಜಧರ್ಮದ
ಹೊರಿಗೆಯನು ಮರೆದಿರೆಯೆಲೇ ಭೂಪಾಲ ಕೇಳೆಂದ ೪೧

ಪರರು ಮಾಡಿದ ಸದ್ಗುಣಂಗಳ
ಮರೆಯೆಯಲೆ ಪರರವಗುಣಂಗಳ
ಮರೆದು ಕಳೆವಾ ಮಾನ್ಯರಿಗೆ ನೀ ಮಾಡಿದವಗುಣವ
ಮೆರೆಯೆಯಲೆ ನೀ ಮಾಡಿದುಚಿತವ
ಮರೆದು ಕಳೆವಾಚಾರವಿದು ಸ
ತ್ಪುರುಷರಭಿಮತವಿದು ಕಣಾ ಭೂಪಾಲ ಕೇಳೆಂದ ೪೨

ಭಜಿಸುವಾ ಭಕ್ತಿಯಲಿ ದೈವ
ದ್ವಿಜ ಗುರುಸ್ಥಾನವನು ದೇಶ
ಪ್ರಜೆಯನರ್ಥಾಗಮದ ಗಡಣೆಗೆ ಘಾಸಿ ಮಾಡೆಯೆಲೆ
ಕುಜನರಭಿಮತದುಗ್ರ ದಂಡ
ವ್ಯಜನದಲಿ ಜನ ಜಠರ ವಹ್ನಿಯ
ಸೃಜಿಸೆಯೆಲೆ ಭವದೀಯ ರಾಜ್ಯಸ್ಥಿತಿಯ ಹೇಳೆಂದ ೪೩

ಆಣೆಗಪಜಯವಿಲ್ಲಲೇ ಕೀ
ಳಾಣೆ ಟಂಕದೊಳಿಲ್ಲಲೇ ನಿ
ತ್ರಾಣದಲಿ ಸಂಗರವ ಹೊಗೆಯೆಲೆ ಶೌರ್ಯ ಗರ್ವದಲಿ
ವಾಣಿಯವನುಚಿತದಲಿ ಧರ್ಮದ
ಲೂಣೆಯವನಹಿತರಲುಪೇಕ್ಷೆಯ
ಕೇಣವನು ದಾನದಲಿ ಮಾಡೆಲೆ ರಾಯ ಕೇಳೆಂದ ೪೪

ಕಳವು ಪುಸಿ ಹಾದರ ವಿರೋಧ
ಸ್ಖಲಿತವಾರಡಿಬಂದಿ ದಳವುಳ
ಬೆಳಗವಿತೆಯನ್ಯಾಯ ಪರಿಭವ ಠಕ್ಕು ಡೊಳ್ಳಾಸ
ಪಳಿವು ವಂಚನೆ ಜಾತಿ ಸಂಕರ
ಕೊಲೆ ವಿರೋಧವು ವಿಕೃತ ಮಾಯಾ
ವಳಿಗಳೆಂಬಿವು ನಿನ್ನೊಳಿಲ್ಲಲೆ ರಾಯ ಕೇಳೆಂದ ೪೫

ರಣಮುಖದೊಳಂಗನೆಯಲಾರೋ
ಗಣೆಯಲರಿಗಳ ಕೂಟದಲಿ ವಾ
ರಣ ತುರಗದೇರಾಟದಲಿ ವಿವಿಧಾಯುಧಂಗಳಲಿ
ಎಣೆ ನೃಪರ ಸೋಂಕಿನಲಿ ಸೆಜ್ಜೆಯ
ಲಣೆಯ ಮಜ್ಜನದಲಿ ಮಹಾಮೃಗ
ಗಣನೆಯೊಳಗೆಚ್ಚರಿಕೆಯುಂಟೇ ರಾಯ ನಿನಗೆಂದ ೪೬

ನುಡಿದೆರಡನಾಡದಿರು ಕಾರ್ಯವ
ಬಿಡದಿರಾವನೊಳಾದರೆಯು ನಗೆ
ನುಡಿಯ ಕುಂದದಿರೊಡೆಯದಿರು ಹೃದಯವನು ಕಪಟದಲಿ
ಬಡ ಮನವ ಮಾಡದಿರು ಮಾರ್ಗದೊ
ಳಡಿಯಿಡದಿರನುಜಾತ್ಮಜರೊಳೊ
ಗ್ಗೊಡೆಯದಿರು ನೃಪನೀತಿಯಿದು ಭೂಪಾಲ ಕೇಳೆಂದ ೪೭

ನೀತಿವಿಡಿದರಸಂಗೆ ಬಹಳ
ಖ್ಯಾತವದು ಜನರಾಗ ರಾಗ
ವ್ರಾತದಿಂ ಧನ ಧನದಿ ಪರಿಕರ ಪರಿಕರದಿ ಜಯವು
ಆತ ಜಯದಿಂ ಧರ್ಮ ಧರ್ಮ ಸ
ಮೇತದಿಂ ಸುರತುಷ್ಟಿ ತುಷ್ಟಿಯ
ನೀತಿಯಿಂದಿಹಪರವ ಗೆಲುವೈ ರಾಯ ನೀನೆಂದ ೪೮

ಮಂತ್ರವುಳ್ಳವನವನೆ ಹಿರಿಯನು
ಮಂತ್ರವುಳ್ಳವನವನೆ ರಾಯನು
ಮಂತ್ರವುಳ್ಳವನವನೆ ಸಚಿವ ನಿಯೋಗಿಯೆನಿಸುವನು
ಮಂತ್ರವಿಲ್ಲದ ಬರಿಯ ಬಲು ತಳ
ತಂತ್ರದಲಿ ಫಲವಿಲ್ಲವೈ ಸ್ವಾ
ತಂತ್ರ್ಯವೆನಿಸಲ್ಕರಿವುದೇ ಭೂಪಾಲ ಕೇಳೆಂದ ೪೯

ಸತ್ಯವುಳ್ಳರೆ ಧರಣಿ ಸಾರುಗು
ಸತ್ಯವುಳ್ಳರೆ ಪದವಿ ಸಾರುಗು
ಸತ್ಯವುಳ್ಳರೆ ಸಕಲರಾಜ್ಯದ ವೀರಸಿರಿ ಸಾರ್ಗು
ಸತ್ಯವೇ ಬೇಹುದು ನೃಪರಿಗಾ
ಸತ್ಯ ಭುಜಬಲಗೂಡಿ ಮಂತ್ರದ
ಸತ್ಯವೇ ಸತ್ವಾಧಿಕವು ಭೂಪಾಲ ಕೇಳೆಂದ ೫೦

ಮೇಲನರಿಯದ ನೃಪನ ಬಾಳಿಕೆ
ಗಾಳಿಗೊಡ್ಡಿದ ಸೊಡರು ನೀರದ
ಜಾಲದೊಡ್ಡಣೆ ಸುರಧನುವಿನಾಕಾರ ಶವದುಡಿಗೆ
ಬಾಳಿಗೌಕಿದ ಕೊರಳು ಭುಜಗನ
ಹೇಳಿಗೆಯಲಿಕ್ಕಿದ ಕರವು ಬೆ
ಳ್ಯಾರ ಹಬ್ಬುಗೆಯುವನ ಸಿರಿ ಭೂಪಾಲ ಕೇಳೆಂದ ೫೧

ಆಯವಿಲ್ಲದ ಬೀಯವನು ಪೂ
ರಾಯವಿಲ್ಲದ ಗಾಯವನು ನಿ
ರ್ದಾಯವಿಲ್ಲದ ಮಂತ್ರವನು ಲೇಸಾಗಿ ಮಿಗೆ ರಚಿಸಿ
ನ್ಯಾಯವಿಲ್ಲದ ನಡವಳಿಯನ
ನ್ಯಾಯ ಹೊದ್ದುವ ಪಾತಕವ ನಿಜ
ಕಾಯದಲಿ ನೀ ಧರಿಸೆಯೆಲೆ ಭೂಪಾಲ ಕೇಳೆಂದ ೫೨

ಫಲವಹುದ ಕೆಡಲೀಯದಳಿ ಪರಿ
ಮಳವ ಕೊಂಬಂದದಲೆ ನೀನಾ
ಳ್ವಿಳೆಯ ಕರದರ್ಥವನು ತೆಗೆವೈ ಪ್ರಜೆಯ ನೋಯಿಸದೆ
ಹಲವು ಸನ್ಮಾನದಲಿ ನಯದಲಿ
ಚಲಿಸದಿಪ್ಪಂದದಲಿ ರಾಜ್ಯವ
ನಿಲಿಸುವಭಿಮತ ಮಂತ್ರಿಯುಂಟೇ ರಾಯ ನಿನಗೆಂದ ೫೩

ಸೂಕರನ ತುಂಬಿಯ ಮರಾಳನ
ಭೇಕವೈರಿಯ ಕಾರುರಗ ಕಪಿ
ಕೋಕಿಲನ ಬರ್ಹಿಯ ಸುಧಾಕಿರಣನ ದಿನಾಧಿಪನ
ಆಕಸದ ದರ್ಪಣದ ಬಕ ರ
ತ್ನಾಕರನಲೊಂದೊಂದು ಗುಣವಿರ
ಬೇಕು ನೃಪರಿಗೆ ನಿನ್ನೊಳುಂಟೇ ರಾಯ ಹೇಳೆಂದ ೫೪

ನೆಚ್ಚದಿರು ಸಿರಿಯನು ವೃಥಾ ಮದ
ಗಿಚ್ಚಿನುರಿಯಲಿ ಬೇಯದಿರು ಮಿಗೆ
ಬೆಚ್ಚಿ ಬೆದರದಿರೆಡರಿನಲಿ ಸತ್ಯವನು ಚಲಿಸದಿರು
ಮೆಚ್ಚದಿರಸತ್ಯವನು ಗುಣವನು
ಮುಚ್ಚದಿರು ಅಪಕೀರ್ತಿನಾರಿಯ
ಮೆಚ್ಚದಿರು ಮರುಳಾಗದಿರು ಭೂಪಾಲ ಕೇಳೆಂದ ೫೫

ಹಲವು ವಿನಿಯೋಗದಲಿ ಸುದತಿಯ
ರೊಲುಮೆಯಲಿ ಸಕಲಾಂಗದಲಿ ನಿ
ಸ್ಖಲಿತ ನಿಜವನೆ ಧರಿಸುವಾಶ್ರಮ ವರ್ಣಭೇದದಲಿ
ಹಳಿವು ನಿನಗಾವಂಗದಲಿ ಬಳಿ
ಸಲಿಸದಲೆ ಪರತತ್ವದಲಿ ವೆ
ಗ್ಗಳಿಸದಲೆ ವೈರಾಗ್ಯಮತ ಭೂಪಾಲ ನಿನಗೆಂದ ೫೬

ಪರಿಜನಕೆ ದಯೆಯನು ಪರಸ್ತ್ರೀ
ಯರಲಿ ಭೀತಿಯ ಹಗೆಗಳಲಿ ನಿ
ಷ್ಕರುಣತೆಯ ಬಡವರಲಿ ದಾನವ ದೈವ ಗುರು ದ್ವಿಜರ
ಚರಣ ಸೇವೆಯಲಾರ್ತತೆಯ ಪಿಸು
ಣರ ನುಡಿಗಳಲಿ ಮೂರ್ಖತೆಯ ನೀ
ವಿರಚಿಪೆಯೊ ಬೇಸರುವೆಯೋ ಭೂಪಾಲ ಕೇಳೆಂದ ೫೭

ಮೋಹದವಳಲಿ ವೈದ್ಯರಲಿ ಮೈ
ಗಾಹಿನವರಲಿ ಬಾಣಸಿಗರಲಿ
ಬೇಹ ಮಂತ್ರಿಗಳಲಿ ವಿಧಾವಂತರಲಿ ಹಿರಿಯರಲಿ
ದೇಹರಕ್ಷಕರಲಿ ಸದೋದಕ
ವಾಹಿಯಲಿ ಹಡಪಾಳಿಯಲಿ ಪ್ರ
ತ್ಯೂಹವನು ವಿರಚಿಸೆಯಲೇ ಭೂಪಾಲ ಕೇಳೆಂದ ೫೮

ತರುಣಿಯಲಿ ಹಗೆಗಳಲಿ ಬಹಳೈ
ಶ್ವರಿಯದಲಿ ಶಸ್ತ್ರಾಂಗಿಯಲಿ ಸಂ
ಸ್ಮರಣದಲಿ ಮದ್ಯಪನಲಬಲಾರ್ಥಿಯಲಿ ಶೃಂಗಿಯಲಿ
ಉರಗನಲಿ ನದಿಯಲಿ ಸಖಿಯರಾ
ತುರಿಯದಲಿ ದುರ್ಮಂತ್ರಿಯಲಿ ದು
ಶ್ಚರಿತನಲಿ ವಿಶ್ವಾಸಿಸೆಯಲೇ ಭೂಪ ಕೇಳೆಂದ ೫೯

ಧಾಳರನು ಧವಳರನು ಠಕ್ಕಿನ
ಠೌಳಿಕಾರರ ಕೃತಕ ಮಾಯಾ
ಜಾಲರನು ಕಾಹುರರನಂತರ್ದಾಹಕರ ಶಠರ
ಖೂಳರನು ಖಳರನು ವಿಕಾರಿಯ
ಜಾಳು ನುಡಿಗಳ ಜಡಮತಿಯನೀ
ನಾಳಿಗೊಂಬೆಯೊ ಲಾಲಿಸುವೆಯೋ ರಾಯ ಹೇಳೆಂದ ೬೦

ಆವ ಕಾಲದೊಳಾವ ಕಾರ್ಯವ
ದಾವನಿಂದಹುದವನ ಮನ್ನಿಪ
ಠಾವಿದೆಂಬುದನರಿದಿಹೈ ಮೃಗಜೀವಿಯಂದದಲಿ
ಲಾವಕರ ನುಡಿ ಕೇಳಿ ನಡೆದರೆ
ಭೂವಳಯದೇಕಾಧಿಪತ್ಯದ
ಠಾವು ಕೆಡುವುದನರಿದಿಹೈ ಭೂಪಾಲ ಕೇಳೆಂದ ೬೧

ಅರಸು ರಾಕ್ಷಸ ಮಂತ್ರಿಯೆಂಬುವ
ಮೊರೆವ ಹುಲಿ ಪರಿವಾರ ಹದ್ದಿನ
ನೆರವಿ ಬಡವರ ಬಿನ್ನಪವನಿನ್ನಾರು ಕೇಳುವರು
ಉರಿವುರಿವುತಿದೆ ದೇಶ ನಾವಿ
ನ್ನಿರಲು ಬಾರದೆನುತ್ತ ಜನ ಬೇ
ಸರಿನ ಬೇಗೆಯಲಿರದಲೇ ಭೂಪಾಲ ಕೇಳೆಂದ ೬೨

ಧನದಲುರು ಧಾನ್ಯದಲಿ ನೆರೆದಿಂ
ಧನದಲುದಕದ ಹೆಚ್ಚುಗೆಯಲಂ
ಬಿನಲಿ ಶಸ್ತ್ರೌಘದಲಿ ಶಿಲ್ಪಿಗಳ ಶಿಲಾಳಿಯಲಿ
ವನವಳಯ ಕೋಟಾವಳಯ ಜೀ
ವನವಳಯ ಗಿರಿವಳಯ ದುರ್ಗಮ
ವೆನಿಪ ದುರ್ಗಾವಳಿ ಸಮಗ್ರವೆ ಭೂಪ ಕೇಳೆಂದ ೬೩

ಕೃಷಿ ಮೊದಲು ಸರ್ವಕ್ಕೆ ಕೃಷಿಯಿಂ
ಪಸರಿಸುವುದಾ ಕೃಷಿಯನುದ್ಯೋ
ಗಿಸುವ ಜನವನು ಪಾಲಿಸುವುದಾ ಜನಪದದ ಜನದಿ
ವಸು ತೆರಳುವುದು ವಸುವಿನಿಂ ಸಾ
ಧಿಸುವಡಾವುದಸಾಧ್ಯವದರಿಂ
ಕೃಷಿವಿಹೀನನ ದೇಶವದು ದುರ್ದೇಶ ಕೇಳೆಂದ ೬೪

ಸತಿಯರೊಲುಮೆಯ ವಿಟರುಗಳನಾ
ಸತಿಯರ ಸ್ಥಿತಿಗತಿಗೆ ತಾನೆಂ
ದತಿಶಯೋಕ್ತಿಯ ನುಡಿವವರನರಮನೆಯ ಕಾಹಿಂಗೆ
ಪತಿಕರಿಸಿದರೆ ಜಗವರಿಯಲಾ
ಕ್ಷಿತಿಪರಭಿಮಾನವು ಮುಹೂರ್ತಕೆ
ಗತವಹುದು ನೀನರಿದಿಹೈ ಭೂಪಾಲ ಕೇಳೆಂದ ೬೫

ಖಡುಗ ಧಾರೆಯ ಮಧು ಮಹಾಹಿಯ
ಹೆಡೆಯ ಮಾಣಿಕ ವಜ್ರದಿಂ ಬಿಗಿ
ದೊಡಲಿಗೊಡ್ಡಿದ ಸುರಗಿ ಕಡುಗೆರಳಿದ ಮೃಗಾಧಿಪನ
ನಡು ಗುಹೆಯೊಳಿಹ ಸುಧೆಯ ಘಟವೀ
ಪೊಡವಿಯೊಡೆತನ ಸದರವೇ ಕಡು
ಬಡವರಿಗೆ ದೊರೆಕೊಂಬುದೇ ಭೂಪಾಲ ಕೇಳೆಂದ ೬೬

ಮಗಗೆ ಮುನಿವನು ತಂದೆ ತಂದೆಗೆ
ಮಗ ಮುನಿವನೊಡಹುಟ್ಟಿದರು ಬಲು
ಪಗೆ ಕಣಾ ತಮ್ಮೊಳಗೆ ಭೂಪರ ಕುಲದ ವಿಧ್ಯವಿದು
ಬಗೆಯ ನಿನ್ನೊಡಹುಟ್ಟಿದರು ಮಂ
ತ್ರಿಗಳೊಳಾಪ್ತರಖಿನ್ನರೇ ದಾ
ಯಿಗರೊಳಂತರ್ಬದ್ಧವುಂಟೇ ರಾಯ ನಿನಗೆಂದ ೬೭

ಮಲೆವ ರಾಯರ ಬೆನ್ನ ಕಪ್ಪವ
ನಲಗಿನಲಿ ಕೊಂಡಾಂತ ಮನ್ನೆಯ
ಕುಲದ ತಲೆ ಚೆಂಡಾಡಿ ಗಡಿಗಳ ದುರ್ಗದಲಿ ತನ್ನ
ಬಲು ಸಚಿವರನು ನಿಲಿಸಿ ತಾ ಪುರ
ದಲಿ ವಿನೋದದಲಿರುತ ಹರುಷದ
ಲಿಳೆಯ ಪಾಲಿಸುವವನರಸು ಭೂಪಾಲ ಕೇಳೆಂದ ೬೮

ಮನ್ನಣೆಯೊಳಲ್ಪತೆಯ ನುಡಿಯೊಳ
ಗುನ್ನತಿಯನೆಸಗುವುದು ಪರರಿಗೆ
ತನ್ನವರಿಗುಗ್ಗಡದ ಪರಿಕರಣೆಯನು ಮಾತಿನಲಿ
ಭಿನ್ನವನು ತೋರುವುದು ರಾಯರ
ಗನ್ನಗತಕ ಕಣಾ ವಿಪುಳ ಸಂ
ಪನ್ನಮತಿ ನಿನಗುಂಟೆ ಭೂಮಿಪಾಲ ಕೇಳೆಂದ ೬೯

ಧನದಿ ಪಂಡಿತರಶ್ವತತಿಯಾ
ಧನದಿ ಧಾರುಣಿ ಮಾನ ಮೇಣಾ
ಧನದಿ ಕಾಂತೆಯರಖಿಳ ವಸ್ತುಗಳ್ಳೆದೆ ಸೇರುವುದು
ನೆನಹು ತೃಪ್ತಿಯೊಳ್ಳೆದದದರಿಂ
ಧನವೆ ಸಾಧನವರಸಿಗಾ ಧನ
ವನಿತು ದೊರಕೊಳಲಿದಿರದಾರ್ಯೆ ಧಾತ್ರಿಪತಿಗಳಲಿ ೭೦

ಶೂರ ಧೀರನುದಾರ ಧರ್ಮೋ
ದ್ಧಾರ ವಿವಿಧ ವಿಚಾರ ಸುಜನಾ
ಧಾರ ರಿಪುಸಂಹಾರ ಚತುರೋಪಾಯ ಸಾಕಾರ
ಸಾರಮಂತ್ರ ವಿಚಾರ ಭುವನಾ
ಧಾರ ಸುಜನಸ್ವಾಮಿ ಕಾರ್‍ಯಾ
ಗಾರನೆನಿಸುವ ಮಂತ್ರಿಯುಂಟೇ ರಾಯ ನಿನಗೆಂದ ೭೧

ತಿಳಿದವನ ಮತಿವಿದನ ಭಾಷಾ
ವಳಿ ಲಿಪಿಜ್ಞನ ಸಾಕ್ಷರಿಕ ಮಂ
ಡಲಿಕ ಸಾವಂತರನಶೇಷರನಿಂಗಿತವನರಿತು
ಸಲೆ ಕರೆವ ಕಳುಹಿಸುವ ನಿಲಿಸುವ
ಬಲುಹನುಳ್ಳನ ಸುಕೃತ ದುಷ್ಕೃತ
ಫಲಿತ ಕಾರ್‍ಯಕೆ ಮಂತ್ರಿಯುಂಟೇ ರಾಯ ನಿನಗೆಂದ ೭೨

ಜರೆ ನರೆಯ ವ್ಯೆ ಸಿರಿಯ ಕುಲ ವೃ
ದ್ಧರನು ಹೀನಾಂಗರನು ಹಿಂಸಾ
ಚರಿತರನು ಜಾತ್ಯಂಧರನು ಧನದಾಸೆಯಳಿದವರ
ಅರಮನೆಯ ಸಂರಕ್ಷಣಾರ್ಥ ದೊ
ಳಿರಿಸಿದರೆ ಮಾನೋನ್ನತಿಕೆ ವಿ
ಸ್ತರಣವಹುದಿದನರಿದಿಹೈ ಭೂಪಾಲ ಕೇಳೆಂದ ೭೩

ಗುಳಿ ತೆವರನೀಕ್ಷಿಸುತ ಬಟ್ಟೆಯ
ಮೆಳೆ ಮರಂಗಳ ಹೊಯ್ಲು ತಪ್ಪಿಸಿ
ನೆಳಲನರಸುತ ವೇಗಗತಿ ಸಾಮಾನ್ಯಗತಿಗಳಲಿ
ಬಳಿವಿಡಿದು ಭೂಭುಂಜರ ಯಾನಂ
ಗಳೊಳಗಳುಕದೆ ಥಗೆಯ ಸೈರಿಸಿ
ಬಳಸುವವನೇ ಛತ್ರಧಾರಕನರಸ ಕೇಳೆಂದ ೭೪

ಬೇಸರದೆ ಕಾಳೋರಗನನ
ಡ್ಡೈಸಿ ಕಟ್ಟಿರುವೆಗಳು ಮಿಗೆ ವೇ
ಡೈಸಿ ಕಡಿದರೆಯಟ್ಟುವಂದದಲಹಿತ ಬಲದೊಳಗೆ
ಓಸರಿದೊಳಹೊಕ್ಕು ಸಮರ ವಿ
ಳಾಸವನು ನೆರೆ ಮೆರೆದು ಕೇಶಾ
ಕೇಶಿಯಲಿ ಹಿಡಿದಿರಿವವನೆ ಕಾಲಾಳು ಕೇಳೆಂದ ೭೫

ಬಿಟ್ಟ ಸೂಠಿಯಲರಿನೃಪರ ನೆರೆ
ಯಟ್ಟಿ ಮೂದಲಿಸುತ್ತ ಮುಂದಣ
ಥಟ್ಟನೊಡೆಹಾಯ್ದು ಹಿತ ಬಲದೊಳಗಾನೆವರಿವರಿದು
ಹಿಟ್ಟುಗುಟ್ಟುತ ಹೆಣನ ಸಾಲುಗ
ಳೊಟ್ಟು ಮೆರೆಯಲು ಕಳನ ಚೌಕದ
ಲಟ್ಟಿಯಾಡಿಸ ಬಲ್ಲವನೆ ರಾವುತನು ಕೇಳೆಂದ ೭೬

ಹೆಬ್ಬಲವನೊಡ ತುಳಿದು ಧರಣಿಯ
ನಿಬ್ಬಗಿಯ ಮಾಡಿಸುತ ಪಾಯ್ದಳ
ದೊಬ್ಬುಳಿಯ ಹರೆಗಡಿದು ಕಾದಿಸುತಾನೆಗಳ ಮೇಲೆ
ಬೊಬ್ಬರಿದು ಶರ ಮಳೆಯ ಕರೆವುತ
ಲಬ್ಬರಿಸಿ ಬವರದಲಿ ರಿಪುಗಳಿ
ಗುಬ್ಬಸವನೆಸಗುವನೆ ಜೋಧನು ರಾಯ ಕೇಳೆಂದ ೭೭

ಒಂದು ಕಡೆಯಲಿ ದಳ ಮುರಿದು ಮ
ತ್ತೊಂದು ದಿಕ್ಕಲಿ ಮನ್ನೆಯರು ಕವಿ
ದೊಂದು ದೆಸೆಯಲಿ ಬಲದೊಳೊಂದನೆಯಧಿಕಬಲವೆನಿಸಿ
ಬಂದು ಸಂತಾಪದಲಿ ಕಾಳಗ
ದಿಂದ ಪುರದಲಿ ನಿಂದು ಕರಿಕರಿ
ಗುಂದುವ ಕ್ಷಿತಿಪಾಲನೇ ಭೂಪಾಲ ಕೇಳೆಂದ ೭೮

ಕುದುರೆಗಳನಾರೈದು ರಥವನು
ಹದುಳಿಸುತ ಸಾರಥಿಯನೋವುತ
ಲಿದಿರ ಮುರಿವುತ ತನ್ನ ಕಾಯಿದುಕೊಳುತ ಕೆಲಬಲನ
ಸದೆದು ಮರಳುವ ಲಾಗು ವೇಗದ
ಕದನ ಕಾಲಾನಲನವನು ತಾ
ಮೊದಲಿಗನಲ್ಲೆ ರಥಿಕರಿಗೆ ಭೂಪಾಲ ಕೇಳೆಂದ ೭೯

ದೊರೆಯ ಕಾಣುತ ವಂದಿಸುತ್ತಂ
ಕರಿಸುತಂತರಿಸುತ್ತ ಮಿಗೆ ಹ
ತ್ತಿರನೆನಿಸದತಿ ದೂರನೆನಿಸದೆ ಮಧ್ಯಗತನೆನಿಸಿ
ಪರಿವಿಡಿಯಲೋಲೈಸುತರಸನ
ಸಿರಿ ಮೊಗವನೀಕ್ಷಿಸುತ ಬೆಸಸಲು
ಕರ ಯುಗವನಾನುವನೆ ಸೇವಕನರಸ ಕೇಳೆಂದ ೮೦

ನರಕ ಕರ್ಮವ ಮಾಡಿಯಿಹದೊಳು
ದುರಿತ ಭಾಜನರಾಗಿ ಕಡೆಯಲಿ
ಪರಕೆ ಬಾಹಿರರಾಗಿ ನಾನಾ ಯೋನಿಯಲಿ ಸುಳಿದು
ಹೊರಳುವರು ಕೆಲಕೆಲರು ಭೂಪರು
ಧರಿಸುವರಲೈ ರಾಜ ಧರ್ಮದ
ಹೊರಿಗೆಯನು ಮರೆದಿರೆಯಲಾ ಭೂಪಾಲ ಕೇಳೆಂದ ೮೧

ನೃಗನ ಭರತನ ದುಂದುಮಾರನ
ಸಗರನ ಪುರೂರನ ಯಯಾತಿಯ
ಮಗನ ನಹುಷನ ಕಾರ್ತವೀರ್ಯನ ನಳನ ದಶರಥನ
ಹಗಲಿರುಳು ವಲ್ಲಭರ ವಂಶದ
ವಿಗಡರಲಿ ಯಮಸೂನು ಸರಿಯೋ
ಮಿಗಿಲೊ ಎನಿಸುವ ನೀತಿಯುಂಟೇ ರಾಯ ನಿನಗೆಂದ ೮೨

ಆ ಮುನೀಂದ್ರನ ವಚನ ರಚನಾ
ತಾಮರಸ ಮಕರಂದ ಕೇಳಿಯ
ಲೀ ಮಹೀಶ ಮನೋ ಮಧುವ್ರತವುಬ್ಬಿತೊಲವಿನಲಿ
ರೋಮ ಪುಳಕದ ರುಚಿರ ಭಾವ
ಪ್ರೇಮ ಪೂರಿತ ಹರುಷ ರಸದು
ದ್ದಾಮ ನದಿಯಲಿ ಮುಳುಗಿ ಮೂಡಿದನರಸ ಕೇಳೆಂದ ೮೩

ಎಲೆ ಮುನಿಯೆ ನೀವ್ ರಚಿಸಿದೀ ನಿ
ರ್ಮಳ ನೃಪಾಲ ನಯ ಪ್ರಪಂಚವ
ಬಳಸಿದೆನು ಕೆಲ ಕೆಲವನಿನ್ನುರೆ ಬಳಸುವೆನು ಕೆಲವ
ಇಳಿದು ಧರಣಿಗೆ ಸುಳಿದು ನೀತಿ
ಸ್ಖಲಿತ ಜಡರನು ತಿದ್ದಿ ತಿಳುಹುವ
ಸುಲಭತನದಲಿ ದೇವಮುನಿ ನಿನಗಾರು ಸರಿಯೆಂದ ೮೪

ಮುನಿಯೆ ಬಿನ್ನಹವಿಂದು ನೀವಿಂ
ದ್ರನ ವಿರಿಂಚಿಯ ಯಮನ ವರುಣನ
ಧನಪತಿಯ ಶೇಷನ ಸಭಾಮಧ್ಯದಲಿ ಸುಳಿವಿರಲೆ
ಇನಿತು ರಚನೆಗೆ ಸರಿಯೊ ಮಿಗಿಲೋ
ಮನುಜ ಯೋಗ್ಯಸ್ಥಾನವೋ ಮೇ
ಣೆನಲು ನಗುತೆಂದನು ಮುನೀಶ್ವರನಾ ಯುಧಿಷ್ಠಿರಗೆ ೮೫

ಜನಪ ಕೇಳುತ್ಸೇದ ಶತ ಯೋ
ಜನ ತದರ್ಧದೊಳಗಲದಳತೆಯಿ
ದೆನಿಪುದಿಂದ್ರ ಸ್ಥಾನವಲ್ಲಿಹುದಖಿಳ ಸುರನಿಕರ
ಜನಪರಲ್ಲಿ ಯಯಾತಿಯಾತನ
ಜನಕ ನೃಗ ನಳ ಭರತ ಪೌರವ
ರೆನಿಪರಖಿಳ ಕ್ರತುಗಳಲಿ ಸಾಧಿಸಿದರಾ ಸಭೆಯ ೮೬

ವೈದಿಕೋಕ್ತಿಗಳಲಿ ಹರಿಶ್ಚಂ
ದ್ರಾದಿರಾಯರು ರಾಜಸೂಯದೊ
ಳಾದರನಿಬರೊಳಗ್ಗಳಿಯರಿಂದ್ರಂಗೆ ಸರಿ ಮಿಗಿಲು
ಆದೊಡಾ ಪುರುಹೂತ ಸಭೆಯೋ
ಪಾದಿ ಯಮನಾಸ್ಥಾನವಲ್ಲಿ ವಿ
ಷಾದದಲಿ ನಿಮ್ಮಯ್ಯನಿಹನಾತನ ಸಮೀಪದಲಿ ೮೭

ವರುಣ ಸಭೆಯೊಳಗಿಹವು ಭುಜಗೇ
ಶ್ವರ ಸಮುದ್ರ ನದೀನದಾವಳಿ
ಗಿರಿ ತರು ವ್ರಜವೆನಿಪ ಸಂಖ್ಯಾರಹಿತ ವಸ್ತುಗಳು
ಅರಸ ಕೇಳು ಕುಬೇರ ಸಭೆಯಾ
ಪರಿಯಗಲವೆಂಭತ್ತು ಯೋಜನ
ಹರಸಖನ ಸಿರಿ ಸದರವೇ ಭೂಪಾಲ ಕೇಳೆಂದ ೮೮

ಬಗೆಯೊಳಗೆ ಮೊಳೆವುದು ಚತುರ್ದಶ
ಜಗವೆನಲು ಜಾವಳವೆ ತಸ್ಯೋ
ಲಗದ ಸಿರಿ ಪರಮೇಷ್ಠಿಗೇನರಿದೈ ಮಹೀಪತಿಯೆ
ಸುಗಮ ಗಾನಿಯರುಪನಿಷದ ವಿ
ದ್ಯೆಗಳು ವೇದಕ್ರತು ಪುರಾಣಾ
ದಿಗಳು ಬಿರುದಾವಳಿಯ ಪಾಠಕರಾತನಿದಿರಿನಲಿ ೮೯

ಮುನಿಗಳೇ ಮಾಣಿಯರು ಮಂತ್ರಾಂ
ಗನೆಯರೋಲೆಯಕಾತಿಯರು ಸುರ
ಜನವೆ ಕಿಂಕರಜನವು ಸೂರ್ಯಾದಿಗಳೆ ಸಹಚರರು
ಘನ ಚತುರ್ದಶ ವಿದ್ಯೆ ಪಾಠಕ
ಜನವಲೈ ಪಾಡೇನು ಪದುಮಾ
ಸನನ ಪರುಠವವಾ ಸಭೆಗೆ ಸರಿ ಯಾವುದೈ ನೃಪತಿ ೯೦

ಇನಿಬರಾಸ್ಥಾನದಲಿ ಸಂಕೃತಿಗ
ಳೆನಿಪ ತೇಜಸ್ವಿಗಳು ಗಡ ಸುರ
ಮುನಿ ಹರಿಶ್ಚಂದ್ರಂಗೆ ಸೇರಿದ ಸುಕೃತ ಫಲವೇನು
ಜನಪನಪದೆಸೆಗೇನು ದುಷ್ಕೃತ
ವೆನಲು ನಕ್ಕನು ರಾಜಸೂಯದ
ಘನವನರಿಯಾ ಧರ್ಮನಂದನಯೆಂದನಾ ಮುನಿಪ ೯೧

ಈ ಮಹಾಕ್ರತುವರವ ನೀ ಮಾ
ಡಾ ಮಹೀಶ್ವರ ಪಂಕ್ತಿಯಲ್ಲಿ ನಿ
ರಾಮಯನು ನಿಮ್ಮಯ್ಯನಿಹನು ಸತೇಜದಲಿ ಬಳಿಕ
ಸೋಮವಂಶದ ರಾಯರೊಳಗು
ದ್ದಾಮರಹ ಬಲುಗೈ ಕುಮಾರ
ಸ್ತೋಮ ನೀವಿರಲಯ್ಯಗೇನರಿದೆಂದನಾ ಮುನಿಪ ೯೨

ಮುನಿಯ ಮಾತಿನ ಬಲೆಗೆ ಸಿಲುಕಿತು
ಜನಪತಿಯ ಚೈತನ್ಯಮೃಗವೀ
ತನ ವಚೋ ವರುಷದಲಿ ನೆನೆದವು ಕರಣವೃತ್ತಿಗಳು
ಮನದಲಂಕುರವಾಯ್ತು ನಾಲಿಗೆ
ಗೊನೆಯಲೆರಡೆಲೆಯಾಯ್ತು ಯಜ್ಞದ
ನೆನವು ಭಾರವಣೆಯಲಿ ಬಿದ್ದುದು ಧರ್ಮನಂದನನ ೯೩

ಕಳುಹಿದನು ಸುರಮುನಿಯನುದರದೊ
ಳಿಳಿದುದಂತಸ್ತಾಪ ಯಜ್ಞದ
ಬಲುಹ ನೆನೆದಡಿಗಡಿಗೆ ಕಂಪಿಸಿ ಕೈಯ ಗಲ್ಲದಲಿ
ಒಲೆದೊಲೆದು ಭಾವದಲಿ ಮಿಗೆ ಕಳ
ವಳಿಸಿ ಪದುಳಿಸಿಕೊಳುತ ಭೂಪತಿ
ತಿಲಕ ಚಿಂತಿಸಿ ನೆನೆವುತಿದ್ದನು ವೀರ ನರಯಣನ ೯೪

ಎರಡನೆಯ ಸಂಧಿ

ಸೂ. ಬಲಿಮಥನ ಫಲುಗುಣರು ಸಹಿತ
ಗ್ಗಳೆಯನೇಕಾಂಗದಲಿ ರಣದಲಿ
ಕಲಿ ಜರಾಸಂಧನನು ಸೀಳಿದು ಬಿಸುಟನಾ ಭೀಮ

ಕೇಳು ಜನಮೇಜಯ ಧರಿತ್ರೀ
ಪಾಲ ಮಂತ್ರಾಳೋಚನೆಗೆ ಭೂ
ಪಾಲ ಕರೆಸಿದನನುಜರನು ಧೌಮ್ಯಾದಿ ಮಂತ್ರಿಗಳ
ಮೇಳವದ ತನಿವೆಳಗುಗಳ ಮಣಿ
ಮೌಳಿಮಂಡಿತರುಪ್ಪರದ ಪಡಿ
ಸೂಳು ಪಾಯವಧಾರಿನಲಿ ಹೊಕ್ಕರು ಸಭಾ ಸ್ಥಳವ ೧

ದ್ರುಪದ ಧೃಷ್ಟದ್ಯುಮ್ನ ಮತ್ಸ್ಯಾ
ಧಿಪತಿ ಕೇಕಯ ಪಾಂಡವಾತ್ಮಜ
ರು ಪತಿಕಾರ್ಯ ವಿಚಾರನಿಷ್ಠರು ಬಂದರೋಲಗಕೆ
ನೃಪತಿ ಹದನೇನಮರ ಮುನಿವರ
ನುಪಚರಿತ ಮಂತ್ರಾರ್ಥ ಸಿದ್ಧಿಗೆ
ರಪಣ ನಮಗುಂಟೀಗ ಬೆಸಸೆಂದರು ಯುಧಿಷ್ಠಿರಗೆ ೨

ಧರೆ ನಮಗೆ ವಶವರ್ತಿ ಖಂಡೆಯ
ಸಿರಿ ನಮಗೆ ಮೈವಳಿ ಯುಧಿಷ್ಠಿರ
ನರಸುತನ ನಳ ನಹುಷ ನೃಗ ಭರತಾದಿ ಭೂಮಿಪರ
ಮರೆಸಿತೆಂಬುದು ಲೋಕವೀ ನೀ
ಬ್ಬರದ ಹೆಸರೆಮಗಿಂದು ಬೊಪ್ಪನ
ಸಿರಿಯನೇವಣ್ಣಿಸುವೆನೆಂದನು ಸುಯ್ದು ಯಮಸೂನು ೩

ಅಲ್ಲಿ ಸುರರಲಿ ಸುಪ್ರತಿಷ್ಠಿತ
ನಲ್ಲ ಗಡ ಪಾಂಡು ಕ್ಷಿತೀಶ್ವರ
ನಿಲ್ಲಿ ವೈಭವಕೇನು ಫಲ ನಾವವರ ಸದ್ಗತಿಗೆ
ಇಲ್ಲಿ ರಚಿಸಿದ ರಾಜಸೂಯದಿ
ನೆಲ್ಲವಹುದಯ್ಯಂಗೆ ಮುಖವಿದು
ದುರ್ಲಭವು ಕೈಕೊಂಡೆವಾವುದು ಮಂತ್ರವಿದಕೆಂದ ೪

ಆಗಲಿದಕೇನರಸ ದೀಕ್ಷಿತ
ನಾಗು ನಿರುಪಮ ರಾಜಸೂಯಕೆ
ಭಾಗ ಧನವನು ಭೂಮಿಪರ ಸದೆದೆಳೆದು ತಹೆವೆಂದು
ಆ ಗರುವರುಬ್ಬೇಳೆ ತಪ್ಪೇ
ನಾಗಲೀ ಗೋವಿಂದ ಮತದಲಿ
ತೂಗಿ ನೊಡುವೆವಿದರ ತೂಕವನೆಂದನಾ ಭೂಪ ೫

ಕಳುಹಿದನು ಸಾರಥಿಯನಾ ರಥ
ಕೆಲವು ದಿವಸಕೆ ಕೃಷ್ಣಭವನ
ಸ್ಥಳದ ಹೊರ ಬಾಹೆಯಲಿ ಚಾಚಿತು ಚಪಳ ಗಮನದಲಿ
ಒಳಗೆ ಬಂದನು ಪಾವುಡವ ಮುಂ
ದಿಳುಹಿದನು ಕೃಷ್ಣಂಗೆ ಪಾಂಡವ
ತಿಲಕನಟ್ಟಿದ ಹದನ ಬಿನ್ನಹ ಮಾಡಿದನು ಬಳಿಕ ೬

ತಿಳಿದನಲ್ಲಿಯ ರಾಜಕಾರ್ಯದ
ನೆಲೆಯನಕ್ರೂರಾದಿ ಸಚಿವರ
ತಿಳುಹಿದನು ಶಿಶುಪಾಲ ಕಂಸನ ಮಾವನಿಂತಿವರ
ಕೊಲುವಡಿದು ಹದ ನಮ್ಮ ಭಾವನ
ನಿಳಯದುತ್ಸಹ ಸೌಮನಸ್ಯವ
ಬಳಸುವರೆ ಹೊತ್ತಿದು ಮನೋರಥ ಸಿದ್ಧಿ ನಮಗೆಂದ ೭

ಎಂದು ವಸುದೇವಾದಿ ಯಾದವ
ವೃಂದವನು ಬಲಭದ್ರರಾಮನ
ಹಿಂದಿರಿಸಿ ಬಳಿಕಿಂದ್ರಸೇನನ ಕೂಡೆ ವೊಲವಿನಲಿ
ಬಂದನಿಂದ್ರಪ್ರಸ್ಥ ಪಟ್ಟಣ
ಕಂದು ವೊಸಗೆಯ ಗುಡಿಯ ತೋರಣ
ದಿಂದ ಕನ್ನಡಿ ಕಳಶದಲಿ ಕೊಂಡಾಡಿದರು ಹರಿಯ ೮

ಪುರಕೆ ಬಿಜಯಂಗೈಸಿ ತಂದರು
ಹರಿಯನರಮನೆಗನಿಬರಂತಃ
ಪುರದ ಕಾಣಿಕೆಗೊಂಡು ಬಾಂಧವ ಜನವನುಚಿತದಲಿ
ಹರಸಿ ಮಧುರ ಪ್ರೀತಿಯಿಂದಾ
ದರಿಸಿ ಮಂತ್ರಾಳೋಚನೆಯ ಮಂ
ದಿರದೊಳೇಕಾಂತದಲಿ ಭೂಪತಿಗೆಂದನಸುರಾರಿ ೯

ಏನು ಕರೆಸಿದಿರೈ ಪ್ರಯೋಜನ
ವೇನು ನಿಮ್ಮುತ್ಸಾಹ ಶಕ್ತಿಯೊ
ಳೇನು ದುರ್ಘಟವೇನು ಶಂಕಿತವೇನು ಸಂಸ್ಖಲಿತ
ದಾನವರ ಕೌರವರ ವೈರದೊ
ಳೇನು ವಿಗ್ರಹವಿಲ್ಲಲೇ ಹದ
ನೇನೆನಲು ಕೃಷ್ಣಂಗೆ ಬಿನ್ನಹ ಮಾಡಿದನು ನೃಪತಿ ೧೦

ದನುಜರಲಿ ಕುರುಸೇನೆಯಲಿ ಭಯ
ವೆನಗೆ ಭಾರಿಯೆ ನಿಮ್ಮ ಘನ ಪದ
ವನಜವಿದು ಸೀಸಕವಲೇ ತನ್ನುತ್ತಮಾಂಗದಲಿ
ಮುನಿಯ ಹೇಳಿಕೆ ಬೊಪ್ಪಗಮರೇಂ
ದ್ರನಲಿ ಸಮರಸವಿಲ್ಲ ಗಡ ನ
ಮ್ಮನಿಬರಲಿ ಸಾಮರ್ಥ್ಯವಿದ್ದುದಕೇನು ಫಲವೆಂದ ೧೧

ಪಿತನ ಪರಮಪ್ರೀತಿಗುನ್ನತ
ಗತಿಗೆ ನಿರ್ಮಳ ರಾಜಸೂಯ
ಕ್ರತುವೆ ಸಾಧನವೆಂದು ಮುನಿಯುಪದೇಶಿಸಿದ ತನಗೆ
ಕ್ರತು ಮಹಾಕ್ರತು ಸಕಲಧರಣೀ
ಪತಿಗಳರ್ಥವ ಗುಣದಲೀಯರು
ವ್ರತವೆನಗೆ ಸಂಕಲ್ಪವಾಯ್ತಿದಕೇನು ಹದನೆಂದ ೧೨

ತಿರುಗಿದರೆ ಸಂಕಲ್ಪ ಹಾನಿಯು
ಪರಮ ಪಾತಕವಿದು ಮಹಾ ನಿ
ಷ್ಠುರದ ಮಖವಿನ್ನಮರ ಮುನಿಪತಿ ದೇವಲೋಕದಲಿ
ಹರಹುವನು ಪರಿಹಾಸ್ಯಮಯ ಸಾ
ಗರವ ದಾಟಿಸು ಜೀಯ ಭವ ಸಾ
ಗರದಿನಿದು ಮಿಗಿಲೇ ಮುರಾಂತಕಯೆಂದನಾ ಭೂಪ ೧೩

ನಕ್ಕನಸುರವಿರೋಧಿ ಮುನಿ ಹಾ
ಯಿಕ್ಕಿದನಲಾ ಬಲೆಯನಕಟಾ
ಸಿಕ್ಕಿದಿರಲಾ ಸ್ವಾಮಿದ್ರೋಹರು ಸದರವೇ ನೃಪರು
ಅಕ್ಕಜದ ಮಖವಿದರ ಚೂಣಿಗೆ
ಚುಕ್ಕಿಯಾಯಿತು ಮನ ಮಹೀಶನ
ಮಕ್ಕಳಾಟಿಕೆಯಾಯ್ತೆನುತ ತೂಗಿದನು ಸಿರಿಮುಡಿಯ ೧೪

ಕೆದರಿ ಸಪ್ತದ್ವೀಪಪತಿಗಳ
ಸದೆದು ರಚಿಸುವ ರಾಜಸೂಯದ
ಹದನನಂಗೈಸುವನದಾರೀ ವರ್ತಮಾನದಲಿ
ಸುದತಿಯರ ಸೂಳೆಯರ ಮುಂದು
ಬ್ಬಿದೆಯಲಾ ನಾರದನ ಘಲ್ಲಣೆ
ಗಿದು ಸುದುರ್ಘಟವಿಂದು ಬಿದ್ದ ವಿಘಾತಿ ಬಲುಹೆಂದ ೧೫

ಮೊದಲಲೇ ನಿಮ್ಮವರು ನಿಮ್ಮ
ಭ್ಯುದಯವನು ಸೇರುವರೆ ಕೌರವ
ರದರೊಳಗ್ಗದ ಕರ್ಣ ಶಕುನಿ ಜಯದ್ರಥಾದಿಗಳು
ಕುದುಕುಳಿಗಳೀಚೆಯಲಿ ಕಂಸನ
ಮುಂದಮುಖನ ಪರಿವಾರವಿದೆ ದೂ
ರಪಲಿ ಮಗಧನ ಹೊರೆಯಲದನೇ ಬಣ್ಣಿಸುವೆನೆಂದ ೧೬

ಕಾಲಯವನಾ ದಂತವಕ್ರ ನೃ
ಪಾಲರಲಿ ದುರುದುಂಬಿಯೈ ಶಿಶು
ಪಾಲ ಪೌಂಡ್ರಕರೆಂಬರಿಗೆ ಸಮದಂಡಿಯೆಮ್ಮೊಡನೆ
ಖೂಳರೀರ್ವರು ಹಂಸ ಡಿಬಿಕರು
ಸಾಲುವನ ಮುರ ನರಕರಾಳನ
ಪೇಳವವನೇನೆಂಬೆನೈ ಭೂಪಾಲ ಕೇಳೆಂದ ೧೭

ಕೆಲವರಿದರೊಳು ನಮ್ಮ ಕೈಯಲಿ
ಕೊಲೆಗೆ ಭಂಗಕೆ ಬಂದು ಬಿಟ್ಟರು
ಕೆಲಕೆ ಸರಿವವನಲ್ಲ ಮಲೆವರ ಮಾರಿ ಮಾಗಧನು
ಬಳಿಕೆಮಗೆ ಬಲವದ್ವಿರೋಧವ
ತೊಳಸಂ ಬಿದ್ದುದು ತೋಟಿಗಾರದೆ
ಜಲಧಿ ಮಧ್ಯದಲೂರ ಕಟ್ಟಿದೆವರಸ ಕೇಳೆಂದ ೧೮

ಮಾವದೇವನ ಮುರಿದಡಾತನ
ದೇವಿಯರು ಬಳಿಕೆಮ್ಮ ದೂರಿದ
ರಾ ವಿಗಡ ಮಗಧಂಗೆ ಮಥುರೆಯ ಪೇಟೆ ದಂಡಾಯ್ತು
ನಾವು ನಾನಾ ದುರ್ಗದಲಿ ಸಂ
ಭಾವಿಸಿದೆವಾತನನು ನಿಮ್ಮೊಡ
ನಾವು ಕೂಡಿದಡಾತ ಮುನಿಯನೆ ಭೂಪ ಕೇಳೆಂದ ೧೯

ಅರಸ ಕೇಳ್ನೂರೊಂದು ವಂಶದ
ಧರಣಿಪರು ಮಾಗಧನ ಮನೆಯಲಿ
ಸೆರೆಯಲೈದರೆ ಬಿಡಿಸಬೇಕು ನಿರಂತರಾಯದಲಿ
ದುರುಳನವ ಭಗದತ್ತ ಬಾಹ್ಲಿಕ
ನರಕ ವೃದ್ಧಕ್ಷತ್ರ ಮೊದಲಾ
ದರಸುಗಳು ಬಲ ಗರ್ವಿತರಸಂಖ್ಯಾತರಹರೆಂದ ೨೦

ಅವರಿರಲಿ ಮತ್ತಿತ್ತಲುತ್ತರ
ದವನಿಪರು ದಕ್ಕಡರು ಧರಣೀ
ಧವರೊಳಧಿಕ ದೊರಥಾರರಗ್ಗದ ಚೀನ ಬೋಟಕರು
ರವಿಯುದಯಗಿರಿ ಶಿಖರದಲಿ ಪಾ
ರ್ಥಿವರು ದಕ್ಷಿಣ ಚೋಳ ಪಾಂಡ್ಯ
ಪ್ರವರರದೆ ವಿಕ್ರಮ ಹಿರಣ್ಯ ಮದಾಂಧರವರೆಂದ ೨೧

ಔಕಿ ಚತುರಂಗದ ನೃಪಾಲರ
ನೂಕಬಹುದಿದಕೇನು ಯಾಗ
ವ್ಯಾಕರಣಕಿವರಿಬ್ಬರೇ ದೂಷಕರು ಧರಣಿಯಲಿ
ಈ ಕುಠಾರರು ಕದನ ಮುಖದವಿ
ವೇಕಿಗಳು ಶಿಶುಪಾಲ ಮಾಗಧ
ರಾಕೆವಾಳರು ವೈರಿರಾಯರೊಳರಸ ಕೇಳೆಂದ ೨೨

ಅಧಿಕರಿವರಿಬ್ಬರೊಳಗಾ ಮಾ
ಗಧನೆ ಬಲುಗೈ ರಾಜಸೂಯಕೆ
ಸದರವನು ನಾ ಕಾಣೆನಾತನ ಖಂಡೆಯದ ಮೊನೆಗೆ
ನಿಧನವಲ್ಲದೆ ಧನವ ನೆರಹುವ
ಹದನ ನೀನೇ ಕಾಂಬೆಯಾತನ
ವಧೆಯು ಹರಿಯದು ನಮ್ಮ ಕೈಯಲಿ ರಾಯ ಕೇಳೆಂದ ೨೩

ಕಂಸನನು ಕೆಡಹಿದೆವು ಮುರಿದೆವು
ಹಂಸ ಡಿಬಿಕರ ಪೌಂಡ್ರಕರ ನಿ
ರ್ವಂಶವನೆ ಸವರಿದೆವು ಮುರ ನರಕಾದಿ ದಾನವರ
ಹಿಂಸೆಯಿವನಲಿ ಹರಿಯದಿವ ನಿ
ಸ್ಸಂಶಯನು ವಿಜಯದಲಿ ಯಾಗ
ಧ್ವಂಸಕನ ನೆರೆ ಮುರಿವುಪಾಯುವ ಕಾಣೆ ನಾನೆಂದ ೨೪

ಈಸು ಘನವೇ ಕೃಷ್ಣ ಯಾಗ
ದ್ವೇಷಿಗಳು ಪಿರಿದಾಗಲವಗಿ
ನ್ನೈಸಲೇ ವರರಾಜಸೂಯಾಧ್ವರಕೆ ಸಂನ್ಯಾಸ
ಈಸು ದೈತ್ಯರು ನಿನ್ನ ಕೈಯಲಿ
ಘಾಸಿಯಾದರು ಮಗಧನೊಬ್ಬನು
ವಿಳಾಸಲಳಿಯನು ಗಡ ಮಹಾದೇವೆಂದನಾ ಭೂಪ ೨೫

ಅಹಹ ಯಾಗವ್ರತಕೆ ಭಂಗವ
ತಹುದೆ ಜೀಯ ಮುರಾರಿ ಕೃಪೆ ಸ
ನ್ನಿಹಿತವಾಗಲಿ ಸಾಕು ನೋಡಾ ತನ್ನ ಕೈಗುಣವ
ಬಹಳ ಬಲನೇ ಮಾಗಧನು ನಿನ
ಗಹಿತನೇ ತಾ ವೀಳೆಯುವ ಸುರ
ಮಹಿಳೆಯರ ತೋಳಿನಲಿ ತೋರುವೆನೆಂದನಾ ಭೀಮ ೨೬

ಮುರುಕಿಸುವ ಮನ್ನೆಯರ ನಾಳವ
ಮುರಿವೆನಖಿಳ ದ್ವೀಪ ಪತಿಗಳ
ತೆರಿಸುವೆನು ಹೊರಿಸುವೆನು ನೆತ್ತಿಯಲವರ ವಸ್ತುಗಳ
ಕರುಬನೇ ಮಾಗಧನು ರಣದಲಿ
ತರಿವೆನಾತನ ನಿಮ್ಮ ಯಾಗದ
ಹೊರಿಗೆ ತನ್ನದು ಕರೆಸು ಋಷಿಗಳನೆಂದನಾ ಭೀಮ ೨೭

ಅಹುದಲೇ ಬಳಿಕೇನು ಯಾಗೋ
ಪಹರಣಕೆ ಸಂನ್ಯಾಸ ಗಡ ವಿ
ಗ್ರಹದಲಧಿಕರು ಗಡ ಜರಾಸಂಧಾದಿ ನಾಯಕರು
ಮಹಿಯ ಮನ್ನೆಯರಧ್ವರವ ನಿ
ರ್ವಹಿಸಲೀಯರು ಗಡ ಶಿವಾ ಶಿವ
ರಹವ ಮಾಡಿದನರಸನೆಂದನು ನಗುತ ಕಲಿಪಾರ್ಥ ೨೮

ಏಕೆ ಗಾಂಡಿವವಿದು ಶರಾವಳಿ
ಯೇಕೆ ಇಂದ್ರಾಗ್ನೇಯ ವಾರುಣ
ವೇಕೆ ರಥವಿದು ರಾಮಭೃತ್ಯ ಧ್ವಜ ವಿಳಾಸವಿದು
ಲೋಕರಕ್ಷಾ ಶಿಕ್ಷೆಗಿಂತಿವು
ಸಾಕು ಹುಲು ಮಂಡಳಿಕರಿವದಿರ
ನೂಕಲರಿಯದೆ ಜೀಯ ಜಂಜಡವೇಕೆ ಬೆಸಸೆಂದ ೨೯

ನೆರಹು ಹಾರುವರನು ದಿಗಂತಕೆ
ಹರಹು ನಮ್ಮನು ಬಂಧುವರ್ಗವ
ಕರೆಸು ರಚಿಸಲಿ ಕಾಣಬೇಹುದು ಕದನ ಕಾಮುಕರ
ಸೊರಹಲರಿಯೆನು ಸಾಧುಗಳನಾ
ದರಿಸುವೆನು ಚಾವಟೆಯರನು ಚಿ
ಮ್ಮುರಿಯ ಬಿಗಿಸುವೆನಮರಿಯರ ಕಡೆಗಣ್ಣ ಕಣ್ಣೆಯಲಿ ೩೦

ಅಹುದು ಭೀಮಾರ್ಜುನರ ನುಡಿ ನಿ
ರ್ವಹಿಸದೇ ಬಳಿಕೇನು ನಿಜಕುಲ
ವಿಹಿತವಲ್ಲಾ ವಿನಯ ವಿಕ್ರಮ ವಿದ್ಯೆ ನೃಪನೀತಿ
ಗಹನವೇ ಗಂಡುಗರಿಗಿದಿರಾ
ರಹಿತ ಬಲವಿನ್ನರಸ ಚಿಂತಾ
ಮಹೀಗವಸರವಲ್ಲ ಮನ ಮಾಡೆಂದನಸುರಾರಿ ೩೧

ಎಮಗೆ ಭೀಮಾರ್ಜುನರ ಕೊಡು ರಿಪು
ರಮಣಿಯರ ಸೀಮಂತ ಮಣಿಗಳ
ನಿಮಿಷದಲಿ ತರಿಸುವೆನು ಹರಿಸುವೆನಹಿತ ಭೂಮಿಪರ
ಸಮರ ಜಯವಿನ್ನಾಯ್ತು ಯಜ್ಞೋ
ದ್ಯಮಕೆ ನಿಷ್ಪ್ರತ್ಯೂಹವಿನ್ನು
ಭ್ರಮೆಯ ಮಾಡದಿರೆಂದು ನೃಪತಿಗೆ ನುಡಿದನಸುರಾರಿ ೩೨

ಕಂಗಳನುಜರು ಚಿತ್ತ ನೀವೆ
ನ್ನಂಗವಣೆಗಿನ್ನೇನು ಭಯವಾ
ವಂಗದಲಿ ನಂಬಿಹೆವಲೇ ನಿಮ್ಮಂಘ್ರಿಪಂಕಜವ
ಸಂಗರದ ಜಯ ನಿನ್ನದಲ್ಲಿಯ
ಭಂಗ ನಿನ್ನದು ಭಕ್ತ ಜನದನು
ಸಂಗಿ ನೀನಿರಲೇನು ನಮಗರಿದೆಂದನಾ ಭೂಪ ೩೩

ವಿಗಡ ಯಾಗಕೆ ಸಕಲ ರಾಯರು
ಹಗೆ ಮರುತ್ತನು ಕಾರ್ತವೀರ್ಯಾ
ದಿಗಳು ಕೆಲವರಶಕ್ತರಾದರು ರಾಜಸೂಯದಲಿ
ಬಗೆಯಲಿದ ದುಷ್ಕಾಲವಸುರರೊ
ಳಗಡು ಮಾಗಧನವನ ಮುರಿದರೆ
ಸುಗಮ ನಿಮ್ಮಯ್ಯಂಗೆ ಸುರಪದವೆಂದನಸುರಾರಿ ೩೪

ಆರವನು ಹಿರಿದಾಗಿ ನೀ ಕೈ
ವಾರಿಸುವೆ ಕಮಲಾಕ್ಷ ಮಾಗಧ
ನಾರುಭಟೆ ತಾನೇನು ವರವೋ ಸಹಜ ವಿಕ್ರಮವೊ
ವೀರರಿದೆ ಸಿಡಿಲಂತೆ ಸಕಲ ಮ
ಹೀ ರಮಣರಿದರೊಳಗೆ ನೃಪ ಮುಖ
ವೈರಿ ಗಡ ಬೆಸಸೆಂದಡೆಂದನು ನಗುತ ಮುರವೈರಿ ೩೫

ಧರಣಿಪತಿ ಕೇಳೈ ಬೃಹದ್ರಥ
ನರಸು ಮಾಗಧಮಂಡಲಕೆ ತ
ತ್ಪುರಿ ಗಿರಿವ್ರಜವೆಂಬುದಲ್ಲಿ ಸಮಸ್ತ ವಿಭವದಲಿ
ಧರೆಯ ಪಾಲಿಸುತಿದ್ದನಾತಂ
ಗರಸಿಯರು ಸೇರಿದರು ಕಾಶೀ
ಶ್ವರನ ತನುಜೆಯರಿಬ್ಬರದುಭುತ ರೂಪು ಗುಣಯುತರು ೩೬

ಅವರೊಡನೆ ಸುಖ ಸತ್ಕಥಾ ಸಂ
ಭವ ವಿನೋದದಲಿದ್ದನೀ ವೈ
ಭವ ಫಲವಪುತ್ರರಿಗೆ ಬಹು ದುಃಖೋಪಚಯವೆಂದು
ಅವನಿಪತಿ ವೈರಾಗ್ಯದಲಿ ರಾ
ಜ್ಯವನು ಬಿಸುಟು ತಪಃ ಪ್ರಭಾವ
ವ್ಯವಹರಣೆಯಲಿ ತನುವ ನೂಕುವೆನೆನುತ ಹೊರವಂಟ ೩೭

ಊರ ಹೊರವಡುವುತ್ತ ಕಂಡನು
ಪಾರಿಕಾಂಕ್ಷಿಯನೊಬ್ಬನನು ಮುನಿ
ವೀರಕಾಂಕ್ಷಿಯನಾಂಗಿರಾತ್ಮಜ ಚಂಡ ಕೌಶಿಕನ
ನಾರಿಯರು ಸಹಿತವನ ಚರಣಾಂ
ಭೋರುಹಕ್ಕಭಿನಮಿಸಲತಿ ವಿ
ಸ್ತಾರಿಸಿದನಾಶೀರ್ವಚನವನು ಮುನಿ ನೃಪಾಲಂಗೆ ೩೮

ಏನಿದರಸನೆ ವದನದಲಿ ದು
ಮ್ಮಾನವೆನಲನಪತ್ಯತಾ ಚಿಂ
ತಾನುರೂಪದ ದುಗುಡವಿದು ನಿಮ್ಮಂಘ್ರಿ ಸೇವೆಯಲಿ
ಹಾನಿ ದುಷ್ಕೃತಕಹುದಲೇ ಸುತ
ಹೀನರಾಜ್ಯವ ಬಿಸುಟೆನೆನಗೀ
ಕಾನನದ ಸಿರಿ ಸಾಕೆನುತ ಬಿಸುಸುಯ್ದನಾ ಭೂಪ ೩೯

ಐಸಲೇ ಸುತಹೀನ ರಾಜ್ಯವಿ
ಳಾಸ ನಿಷ್ಫಲವಹುದಲೇ ಸಂ
ತೋಷವೇ ಸುತಲಾಭವಾದರೆ ಪೊಲ್ಲೆಯೇನಿದಕೆ
ಆ ಸಮರ್ಥ ಮುನೀಂದ್ರನಂತ
ರ್ಭಾಸಿತಾತ್ಮ ಧ್ಯಾನ ಸುಖ ವಿ
ನ್ಯಾಸವಿರಲಂಕದಲಿ ಬಿದ್ದುದು ಮಧುರ ಚೂತಫಲ ೪೦

ಕಂದೆರೆದು ಮುನಿ ಬಳಿಕ ಭೂಪತಿ
ಗೆಂದನಿದ ಕೋ ಪುತ್ರಸಂತತಿ
ಗೆಂದು ಸಾಧನವಿದನು ಕೊಡು ನೀನೊಲಿದು ವಧುಗೆನಲು
ಕಂದಿದಾನನ ಉಜ್ವಲ ಪ್ರಭೆ
ಯಿಂದ ಬೆಳಗಿತು ರಾಣಿಯರು ಸಹಿ
ತಂದು ಮುನಿ ಪದಕೆರಗಿ ಪರಿತೋಷದಲಿ ನಿಂದಿರ್ದ ೪೧

ವರವನೊಂದನು ಹೆಸರುಗೊಂಡೀ
ಧರಣಿಪತಿಗಾ ಮುನಿಪ ಕೊಟ್ಟನು
ಪುರಕೆ ಮರಳಿದನರಸನಾ ಮುನಿ ತೀರ್ಥಯಾತ್ರೆಯಲಿ
ಸರಿದನತ್ತಲು ಚೂತಫಲವಿದ
ನೆರಡು ಮಾಡಿ ಬೃಹದ್ರಥನು ತ
ನ್ನರಸಿಯರಿಗಿತ್ತನು ಯುಧಿಷ್ಠಿರ ಕೇಳು ಕೌತುಕವ ೪೨

ಬಲಿದುದವರಿಗೆ ಗರ್ಭ ಜನನದ
ನೆಲೆಯ ಕಾಲಕೆ ಸತಿಯರುದರದೊ
ಳಿಳಿದುದೊಂದೊಂದವಯವದ ಸೀಳೆರಡು ಸಮವಾಗಿ
ಬಳಿಕ ಕಂಡವರಕಟ ದುಷ್ಕೃತ
ಫಲವೆ ಸುಡಲಿವನೆನುತ ಬಿಸುಟರು
ಹೊಳಲ ಹೊರಬಾಹೆಯಲಿ ನಡುವಿರುಳರಸ ಕೇಳೆಂದ ೪೩

ನಡುವಿರುಳು ಜರೆಯೆಂಬ ರಕ್ಕಸಿ
ಯಡಗನರಸುತ ಬಂದು ಕಂಡಳು
ಮಿಡುಕುವೀ ಸೀಳೆರಡವನು ಹೊರ ಹೊಳಲ ಬಾಹೆಯಲಿ
ತುಡುಕಿದಳು ಸೀಳ್ದೇಕೆ ತಿನ್ನದೆ
ಮಡಗಿದರೊ ಕೌತುಕವದೇನೀ
ಯೆಡಬಲನಿದೆಂದಸುರೆ ದಿಟ್ಟಿಸಿ ನೋಡಿದಳು ಶಿಶುವ ೪೪

ಶಿಶುವನಾರೋ ಸೀಳ್ದು ತಿನ್ನದೆ
ಬಿಸುಟು ಹೋದರೆನುತ್ತ ಜರೆ ಸಂ
ಧಿಸಿದಳಾಕಸ್ಮಿಕದ ಸೀಳೆರಡನು ವಿನೋದದಲಿ
ಪಸರಿಸಿದುದಸು ಮೇಘರವ ಘೂ
ರ್ಮಿಸುವೊಲ್ ಚೀರಿದನು ಗಿರಿಗಳ
ಬೆಸುಗೆ ಬಿಡೆ ನಡುವಿರುಳು ಕೋಳಾಹಳಿಸಿತಾ ರಭಸ ೪೫

ಊರ ಹೊರವಳಯದಲಿದೇನು ಮ
ಹಾ ರಭಸವಿರುಳೆನುತ ಹರಿದುದು
ಪೌರಜನ ಝೋಂಪಿಸುವ ಕೈದೀವಿಗೆಯ ಬೆಳಗಿನಲಿ
ಆರಿವಳು ತಾನೆನುತ ಕಂಡುದು
ದೂರದಲಿ ದಾನವಿಯನವಳ ಘ
ನೋರುಗಳ ಸೋಗಿಲಲಿ ಕೈದೊಟ್ಟಿಲ ಕುಮಾರಕನ ೪೬

ನಿಂದುದಲ್ಲಿಯದಲ್ಲಿ ರಕ್ಕಸಿ
ಯೆಂದು ಭಯದಲಿ ಬಳಿಕ ಕರುಣದ
ಲೆಂದಳವಳಂಜದಿರಿ ಹೋಹೊ ಯೆನುತ ಕೈ ನೆಗಹಿ
ಇಂದಿವನು ಮಗಸೆನಗೆ ಭೂಪತಿ
ಬಂದನಾದರೆ ಕೊಡುವೆನೀತನ
ನೆಂದಡಾಕ್ಷಣ ಕೇಳಿ ಹರಿತಂದನು ಮಹೀಪಾಲ ೪೭

ಅರಸ ಕೋ ನಿನ್ನವನನೀ ಮುನಿ
ವರ ಕುಮಾರನನೆನ್ನ ಹೆಸರಲಿ
ಕರೆವುದೀತನ ಸೀಳ ಬೆಸ್ಜವಳಾನು ಬೆದರದಿರು
ಜರೆಯೆನಿಪುದಭಿಧಾನವನ್ನದು
ವರ ಜರಾಸಂಧಕನಿವನು ಸುರ
ನರರೊಳಗೆ ಬಲುಗೈಯನಹನೆಂದಿತ್ತಳರ್ಭಕನ ೪೮

ಅಸುರೆಯನು ಮನ್ನಿಸಿದನಾಕೆಯ
ಪೆಸರ ಮಗನಿವನೆಂದು ಲೋಕ
ಪ್ರಸರವರಿಯಲು ನಲವಿನಲಿ ಸಾಕಿದನು ಮಾಗಧನ
ಅಸುರರಲಿ ಮರ್ತ್ಯರಲಿ ಸುರರಲಿ
ಯೆಸಕವುಳ್ಳವನೆನಿಸಿದನು ಸಾ
ಹಸದ ಜೋಡಣೆ ಜಡಿದುದವನಲಿ ರಾಯ ಕೇಳೆಂದ ೪೯

ಅದರಿನಾ ಮಾಗಧನ ಮುರಿದ
ಲ್ಲದೆ ನೃಪಾಲಕರಂಜಿ ಕಪ್ಪದೊ
ಳೊದಗಲರಿಯರು ಮೆರೆಯಲೀಯರು ಯಾಗ ಮಂಟಪವ
ಇದು ನಿಧಾನವು ಭೀಮ ಪಾರ್ಥರಿ
ಗಿದು ಮುಹೂರ್ತವು ವೀಳೆಯವ ತಾ
ಕದನ ವಿಜಯದ ವೀರ ಸೇನೆಯನಿಕ್ಕಿ ಕಳುಹೆಂದ ೫೦

ಮರೆಯದೇತಕೆ ರಾಜಸೂಯದ
ಹೊರಿಗೆ ನಿನ್ನದು ರಾಣಿಕವ ನಾ
ನರಿಯೆನೆಮ್ಮರ್ಥಾಭಿಮಾನ ಪ್ರಾಣದೊಡೆಯನಲೆ
ಕಿರಿಯರಿವದಿರು ರಾಜಸೂಯದ
ಕರುಬರತಿ ಬಲ್ಲಿದರು ಕೃಪೆಯನು
ಮೆರೆವುದೆಂದಸುರಾರಿಯಂಘ್ರಿಗೆ ಚಾಚಿದನು ಶಿರವ ೫೧

ಎತ್ತಿದನು ಮುರವೈರಿ ರಾಯನ
ಮಸ್ತಕವ ನಸುನಗುತ ಕರೆ ಸುಮು
ಹೂರ್ತಿಕರನಕ್ಷೋಹಿಣಿಯ ಬರಹೇಳು ದಳಪತಿಯ
ಸುತ್ತಣರಸರಿಗೋಲೆಯುಡುಗೊರೆ
ಯಿತ್ತು ದೂತರ ಕಳುಹು ಬಳಿಕಿನೊ
ಳುತ್ತರೋತ್ತರಸಿದ್ಧಿ ನಿನಗಹುದೆಂದನಸುರಾರಿ ೫೨

ರೂಢಿಸಿದ ಸುಮುಹೂರ್ತದಲಿ ಹೊರ
ಬೀಡು ಬಿಟ್ಟುದು ದಧಿಯ ದೂರ್ವೆಯ
ಕೂಡಿದಕ್ಷತೆಗಳ ಸುಲಾಜಾವಳಿಯ ಮಂಗಳದ
ಜೋಡಿಗಳ ಜಯರವದ ದೈತ್ಯ ವಿ
ಭಾಡ ಸೂಕ್ತದ ವಿಗಡ ಬಿರುದು ಪ
ವಾಡಗಳ ಪಾಠಕರ ಗಡಬಡೆ ಗಾಡಿಸಿತು ನಭವ ೫೩

ಆಳು ನಡೆಯಲಿ ಮಗಧರಾಯನ
ಮೇಲೆ ದಂಡು ಮುಕುಂದ ದಳಪತಿ
ಹೇಳಿಕೆಗೆ ಭೀಮಾರ್ಜುನರ ಬರಹೇಳು ಹೇಳೆನುತ
ಆಳು ಸಾರಿದರವನಿಪತಿಗಳು
ಮೇಳದಲಿ ಹೊರವಂಟು ಬರೆ ದೆ
ಖ್ಖಾಳವನು ನೋಡಿದರು ನಡೆದರು ಪಯಣಗತಿಗಳಲಿ ೫೪

ಜನಪ ಕೇಳ್ಳೈ ಕೃಷ್ಣ ಭೀಮಾ
ರ್ಜುನರು ವಿಮಳಸ್ನಾತಕವ್ರತ
ಮುನಿಗಳಾದರು ನಡೆದು ಪಯಣದ ಮೇಲೆ ಪಯಣದಲಿ
ಜನದ ಕಾಣಿಕೆಗೊಳುತ ನಾನಾ
ಜನಪದಂಗಳ ಕಳೆದು ಗಂಗಾ
ವಿನುತ ನದಿಯನು ಹಾಯ್ದು ಬಂದರು ಪೂರ್ವ ಮುಖವಾಗಿ ೫೫

ಬರುತ ಕಂಡರು ಕೂಡೆ ಕೊಬ್ಬಿದ
ಸಿರಿಯನೂರೂರುಗಳ ಸೊಂಪಿನ
ಭರಿತವನು ಗೋಧನ ಸಮೃದ್ಧಿಯ ಧಾನ್ಯರಾಶಿಗಳ
ವರ ನದಿಯ ಕಾಲುವೆಯ ತೋಟದ
ತೆರಳಿಕೆಯ ಪನಸಾಮ್ರ ಪೂಗೋ
ತ್ಕರದ ರಮ್ಯಾರಾಮ ಮಂಡಿತ ಮಗಧಮಂಡಲವ ೫೬

ಮೆಳೆಗಳೇ ದ್ರಾಕ್ಷೆಗಳು ವೃಕ್ಷಾ
ವಳಿಗಳೇ ಸಹಕಾರ ದಾಡಿಮ
ಫಲಿತ ಪನಸ ಕ್ರಮುಕ ಜಂಬೂ ಮಾತುಳಂಗಮಯ
ಕಳವೆ ಶಾಲೀಮಯವು ಹೊಸಲ
ಸ್ಖಲಿತ ಲಕ್ಷ್ಮೀಮಯವು ನಗರಾ
ವಳಿಗಳೆನೆ ಶೋಭಿಸಿತು ಜನಪದವಿವರ ಕಣುಮನಕೆ ೫೭

ದೇಶ ಹಗೆವನದೆಂದು ಕಡ್ಡಿಯ
ಘಾಸಿ ಮಾಡದೆ ಮಿಗೆ ವಿನೋದದ
ಲೈಸು ಪಡೆ ನಡೆತಂದು ಬಿಟ್ಟುದು ಗಿರಿಯ ತಪ್ಪಲಲಿ
ಆ ಸರೋರುಹ ಬಂಧು ಚರಮಾ
ಶಾ ಸತಿಯ ಚುಂಬಿಸೆ ಗಿರಿವ್ರಜ
ದಾ ಶಿಖರವನು ಹತ್ತಿದರು ಹರಿ ಭೀಮ ಫಲುಗುಣರು ೫೮

ವೃಷಭಚರ್ಮ ನಿಬದ್ಧ ಭೇರಿಗ
ಳೆಸೆದವಕ್ಷತೆ ಗಂಧಮಾಲ್ಯ
ಪ್ರಸರದಲಿ ಶೈಲಾಗ್ರದಲಿ ಸಂಪನ್ನ ಪೂಜೆಯಲಿ
ಅಸುರರಿಪು ಭೀಮಾರ್ಜುನರು ತ
ದ್ವಿಷಮ ಭೇರೀತ್ರಯವ ಹೊಯ್ದೌ
ಬ್ಬಿಸಿದರದುಭುತ ರವ ಮಿಗಿಲು ಕೆಡೆದುದು ಧರಿತ್ರಿಯಲಿ ೫೯

ಏನಿದದುಭುತವೆಂದು ನಡುವಿರು
ಳಾ ನರೇಶ್ವರನಮಳ ವೇದ ವಿ
ಧಾನದಲಿ ತಚ್ಛಾಂತಿಗೋಸುಗ ಕರೆಸಿ ಭೂಸುರರ
ದಾನದಲಿ ವಿವಿಧಾಗ್ನಿಕಾರ್ಯ ವಿ
ಧಾನದಲಿ ವಿಪ್ರೌಘವಚನ ಸ
ಘಾನದಲಿ ಮಗಧೇಶನಿದ್ದನು ರಾಯ ಕೇಳೆಂದ ೬೦

ಇವರು ಗಿರಿಯಿಂದಿಳಿದು ರಾತ್ರಿಯೊ
ಳವನ ನಗರಿಯ ರಾಜ ಬೀದಿಯ
ವಿವಿಧ ವಸ್ತುವ ಸೂರೆಗೊಂಡರು ಹಾಯ್ದು ದಳದುಳವ
ಕಿವಿದರಡ್ಡೈಸಿದರನುಬ್ಬಿದ
ತವಕಿಗರು ಮಗಧೇಂದ್ರರಾಯನ
ಭವನವನು ಹೊಕ್ಕರು ವಿಡಂಬದ ವಿಪ್ರವೇಷದಲಿ ೬೧

ಉರವಣಿಸಿದರು ಮೂರು ಕೋಟೆಯ
ಮುರಿದರಾ ದ್ವಾರದಲಿ ರಾಯನ
ಹೊರೆಗೆ ಬಂದರು ಕಂಡರಿದಿರೆದ್ದನು ಜರಾಸಂಧ
ಧರಣಿಯಮರರಪೂರ್ವಿಗರು ಭಾ
ಸುರರು ಭದ್ರಾಕಾರರೆಂದಾ
ದರಿಸಿ ಮಧುಪರ್ಕಾದಿಗಳ ಮಾಡಿದನು ಭಕ್ತಿಯಲಿ ೬೨

ಕೇಳಿದನು ಕುಶಲವನು ಕುಶಲವ
ಹೇಳಿದರು ಕುಳ್ಳಿರಿಯೆನಲು ಭೂ
ಪಾಲಕರು ಕುಳ್ಳಿರ್ದರೆವೆಯಿಕ್ಕದೆ ನಿರೀಕ್ಷಿಸುತ
ಹೇಳಿರೈ ನಿಮಗಾವ ದೇಶ ವಿ
ಶಾಲ ಗೋತ್ರವದಾವುದೆನುತ ವಿ
ಲೋಲ ಮತಿ ಚಿಂತಿಸಿದನಿವದಿರು ವಿಪ್ರರಲ್ಲೆಂದು ೬೩

ಸ್ನಾತಕ ವ್ರತ ವೇಷದಲಿ ಬಂ
ದಾತಗಳು ತಾವಿವರು ಶಸ್ತ್ರ
ವ್ರಾತದಲಿ ಶಿಕ್ಷಿತರು ಕರ್ಕಶ ಬಾಹುಪಾಣಿಗಳು
ಕೈತವದಿನೈತಂದರರ್ಥವ
ನೀತಗಳು ಬಯಸರು ವಿರೋಧ
ಪ್ರೀತಿಮುಖರಿವರಾರೊ ಶಿವಶಿವಯೆನುತ ಚಿಂತಿಸಿದ ೬೪

ಆರಿವರು ದೇವತ್ರಯವೊ ಜಂ
ಭಾರಿ ಯಮ ಮಾರುತರೊ ರವಿ ರಜ
ನೀ ರಮಣ ಪಾವಕರೊ ಕಪಟ ಸ್ನಾತಕವ್ರತದ
ಧಾರುಣೀಶ್ವರರೊಳಗೆ ಧಿಟ್ಟರ
ದಾರು ತನ್ನೊಳು ತೊಡಕಿ ನಿಲುವ ವಿ
ಕಾರಿಗಳ ನಾ ಕಾಣೆನೆಂದನು ತನ್ನ ಮನದೊಳಗೆ ೬೫

ಈಗ ಮಿಡುಕುಳ್ಳವರು ಮಹಿಯಲಿ
ನಾಗಪುರದರಸುಗಳು ನಮ್ಮವ
ರಾಗಿಹರು ಪಾಂಡುವಿನ ಮಕ್ಕಳು ಮೀರಿ ಖಳರಲ್ಲ
ಸಾಗರೋಪಾಂತ್ಯದ ನರೇಂದ್ರರು
ಭೋಗಿಸಿದ ಮುತ್ತುಗಳು ಭಾವಿಸ
ಲೀ ಗಯಾಳರ ಗರ್ವವೇನು ನಿಮಿತ್ತವಾಯ್ತೆಂದ ೬೬

ಯಾದವರು ಹಿಂದೆಮ್ಮೊಡನೆ ಹಗೆ
ಯಾದವರು ಬಳಿಕವರೊಳಗೆ ತುರು
ಗಾದವನ ಕರುಗಾದವನ ಮಾಧವನ ಮಾತೇನು
ಮೇದಿನಿಯ ಮಂಡಳಿಕ ಮನ್ನೆಯ
ರಾದವರು ನಮ್ಮೊಡನೆ ಸೆಣಸುವ
ರಾದಡಿದು ದುಷ್ಕಾಲ ವಶವಿದು ಚಿತ್ರವಾಯ್ತೆಂದ ೬೭

ಬವರಿಗರು ನೀವ್ ವಿಪ್ರವೇಷದ
ಜವನಿಕೆಯ ಜಾಣಾಯ್ಲ್ಲತನದಿಂ
ದವಗಡಿಸಿ ಹೊಕ್ಕಿರಿಯಪದ್ವಾರದಲಿ ನೃಪಸಭೆಯ
ನಿವಗಿದೇನೀ ವಸನ ಕಪಟ
ವ್ಯವಹರಣೆ ಕೃತ್ರಿಮವೊ ಸಹಜವೊ
ರವಣ ಮತ್ತೇನುಂಟು ಹೇಳಿನ್ನಂಜಬೇಡೆಂದ ೬೮

ಸ್ನಾತಕವ್ರತವೇನು ಪಾರ್ಥಿವ
ಜಾತಿಗಿಲ್ಲಲೆ ವೈಶ್ಯ ಕುಲಕಿದು
ಪಾತಕವು ನಾವಿಂದು ಪಾರ್ಥಿವ ಜಾತಿ ಸಂಭವರು
ಸ್ನಾತಕರು ನಾವ್ ವೈರಿ ಗೃಹದಲ
ಭೀತರದ್ವಾರ ಪ್ರವೇಶವ
ನೀತಿಯಲ್ಲ ಪುರಾಣಸಿದ್ಧವಿದೆಂದನಸುರಾರಿ ೧೯

ವೈರಿ ಭವನವೆ ನಮ್ಮದಿದು ನಾವ್
ವೈರಿಗಳೆ ನಿಮಗೆಮಗೆ ಜನಿಸಿದ
ವೈರಬಂಧ ನಿಮಿತ್ತವಾವುದು ನಿಮ್ಮ ಪಕ್ಷದಲಿ
ಆರು ನೀವೀ ಬ್ರಾಹ್ಮಣರು ನಿಮ
ಗಾರುಪಾಧ್ಯರು ಹೇಳಿ ನಿಮ್ಮ ವಿ
ಕಾರ ಬರಿದೇ ಹೋಗದೆಂಬನು ಮಗಧಪತಿ ನಗುತ ೨೦

ಮುರಿದು ಹಲಬರಿಳಾಧಿನಾಥರ
ಸೆರೆಯಲಿಕ್ಕಿದೆ ರಾಜ್ಯಮದದಲಿ
ಮರೆದು ಮಾನ್ಯರನಿರಿದು ಹೆಚ್ಚಿಸಿಕೊಂಡೆ ಭುಜಬಲವ
ಅರಿಯದಳುಪಿದ ಪಾತಕಕೆ ಬಿಡು
ಸೆರೆಯ ಪ್ರಾಯಶ್ಚಿತ್ತವಿದು ನಾ
ವುರುವ ವೇಷದುಪಾಧ್ಯರೆಂದನು ನಗುತ ಮುರಹರನು ೨೧

ಆ ನೃಪಾಲರ ಮಗನೊ ಮೊಮ್ಮಗನೊ
ನೀನವರ ಬಾಂಧವನೊ ಭೃತ್ಯನೊ
ನೂನವಕ್ಷನೊ ಬೆರಳ ಬದಗನೊ ಕಂರುಳ ಕೋಮಳನೊ
ಏನು ನಿನ್ನಂಘವಣೆ ನೀನಾ
ರಾ ನರೇಂದ್ರರ ಸೆರೆಯ ಬಿಡುಗಡೆ
ಗೇನನೆಂಬೆನು ರಹವನೆಂದನು ತೂಗಿ ಮಣಿಶಿರವ ೨೨

ಎಲವೊ ಧರೆಯಲಧರ್ಮಶೀಲರ
ತಲೆಯ ಚೆಂಡಾಡುವೆವು ಧರ್ಮವ
ಸೊಲಿದು ಕೊಂಡಾಡುವೆವು ಶಿಕ್ಷಾ ರಕ್ಷಣ ವ್ಯಸನ
ನೆಲೆ ನಮಗೆ ನೀನರಿಯೆ ರಾಜಾ
ವಳಿಯ ಬಿಡು ಘಡ ಭಂಡ ವಿದ್ಯೆಯ
ಬಳಸುವಾ ನಮ್ಮೊಡನೆಯೆಂದನು ದಾನವಧ್ವಂಸಿ ೨೩

ಇವರು ಗಡ ಜಗದೊಳಗೆ ಶಿಕ್ಷಾ
ಸವನದಲಿ ದೀಕ್ಷಿತರು ಗಡ ಕೈ
ತವದ ಭಂಡರು ನೀವೊ ನಾವೋ ಸಾಕದಂತಿರಲಿ
ಕವಡುತನದಲಿ ದಿಟ್ಟರಹಿರಂ
ಘವಣೆಯೊಳ್ಳಿತು ನಿಮ್ಮ ನಿಜವನು
ವಿವರಿಸಿರೆ ನೀವಾರು ಹೇಳೆಂದನು ಜರಾಸಂಧ ೨೪

ಕೇಳಿ ಮಾಡುವುದೇನು ತಾನಸು
ರಾಳಿ ಧೂಳೀಪಟಲ ವೈರಿ ನೃ
ಪಾಲ ಚೌಪಟಮಲ್ಲನೀತನು ಭೀಮಸೇನ ಕಣಾ
ಭಾಳನೇತ್ರನ ಭುಜಬಲದ ಸಮ
ಪಾಳಿಯರ್ಜುನನೀತನೇಳಾ
ಕಾಳಗವ ಕೊಡು ನಮ್ಮೊಳೊಬ್ಬರಿಗೆಂದನಸುರಾರಿ ೨೫

ಕೇಳಿ ಕೆದರಿದ ಕಡು ನಗೆಯಲಡ
ಬೀಳುತೇಳುತ ಬಿರುವನಿಯು ಕ
ಣ್ಣಾಲಿಗಳ ಝೊಮ್ಮೆದ್ದ ರೋಮದ ಜಡಿವ ಬಿಡುದಲೆಯ
ಸೂಳು ನಗೆ ಬಿಳಿನಗೆಯಲಡಿಗಡಿ
ಗಾಳಿ ಮುಸುಗುಬ್ಬಸದಲಿದ್ದು ಕ
ರಾಳಮತಿ ಸಂತೈಸಿ ನೆರೆ ತನ್ನವರಿಗಿಂತೆಂದ ೨೬

ಈತನಾರೆಂದರಿವಿರೈ ನ
ಮ್ಮಾತನೀತನು ನಮ್ಮ ಕಂಸಂ
ಗೀತನಳಿಯನು ನಮಗೆ ಮೊಮ್ಮನು ಮಗನು ದೇವಕಿಗೆ
ಈತ ಕಾಣಿರೆ ಹಿಂದೆ ಚೌರಾ
ಶೀತಿ ದುರ್ಗದೊಳೋಡಿ ಬದುಕಿದ
ನೀತ ಬಲುಗೈ ಬಂಟನೆಂದನು ಮಗಧಪತಿ ನಗುತ ೨೭

ಕೊಳಲ ರಾಗದ ರಹಿಯೊ ಕಲ್ಲಿಯ
ಕಲಸುಗಳೋ ಹಳ್ಳಿಕಾತಿಯ
ರೊಳಗುಡಿಯ ಹಾದರವೊ ತುರುಗಾಹಿಗಳ ತೋಹುಗಳೊ
ಬಲುಸರಳ ಸರಿವಳೆಯ ಮಿದುಳೊಡೆ
ಗಲಸುಗಳಡಾಯುಧದ ತಳುಕಿನ
ಕೊಳುಗುಳದ ಜಯಸಿರಿಯ ಕಾಹಿನೊಳಾರು ನೀನೆಂದ ೨೮

ಹೋರಿ ಹೆಂಗುಸು ಬಂಡಿ ಪಕ್ಷಿ ಸ
ಮೀರಣಾಶ್ವಜಗರ ಗಾರ್ದಭ
ವೀರರೀತನ ಘಾತಿಗಳುಕಿತು ಕಂಸ ಪರಿವಾರ
ಆರುಭಟೆಯುಳ್ಳವನು ಕಂಸನ
ತೋರಹತ್ತನ ತೊಡಕಿದನು ಗಡ
ಭಾರಿಯಾಳಹನುಂಟು ಶಿವಶಿವಯೆಂದನಾ ಮಗಧ ೨೯

ಎಲವೊ ಗೋವಳ ನಿನ್ನ ಕಂಸನ
ನಿಳಯವೋ ಪೌಂಡ್ರಕನ ಕದನದ
ಕಳನೊ ಹಂಸನ ಹೋರಟೆಯೊ ಮೇಣ್ ಡಿಬಿಕನಡುಪಾಯೊ
ಹುಲಿಗೆ ಮೊಲನಭ್ಯಾಗತನೆ ಕರಿ
ಕಳಭ ಸಿಂಹಕೆ ಸರಿಯೆ ನೀ ನಿ
ನ್ನಳವನರಿಯದೆ ಹೊಕ್ಕು ಕೆಣಕಿದೆ ಕೆಟ್ಟೆ ಹೋಗೆಂದ ೩೦

ಇದುವೆ ಪಿತ್ತದ ವಿಕಳವೋ ಮ
ದ್ಯದ ವಿಕಾರವೊ ಭಂಗಿ ತಲೆಗೇ
ರಿದುದೊ ಭಟನಾದರೆ ವಿಘಾತದಲೇಳು ಕಾಳಗಕೆ
ಸದನ ನಿನ್ನದು ಸೂಳೆಯರ ಮುಂ
ದೊದರಿ ಫಲವೇನೆದ್ದು ಬಾ ಭಾ
ಳದಲಿ ಬರೆದುದ ತೊಡೆವನೆಂದನು ದಾನವಧ್ವಂಸಿ ೩೧

ಎಲವೊ ಗೋಪಕುಮಾರ ಕಂಸನ
ಲಲನೆಯರ ವೈಧವ್ಯ ದುಃಖಾ
ನಲನ ನಂದಿಸಲಾಯ್ತು ನಿನ್ನಯ ರುಧಿರ ಜಲಧಾರೆ
ಅಳಿದ ಕಂಸನ ಕಾಲಯವನನ
ಕಳನ ಹರಿಬವ ಗೆಲಿದು ದೈತ್ಯಾ
ವಳಿಯ ಬಂಧುತ್ವವನು ಬಳಸುವೆನೆಂದನಾ ಮಗಧ ೩೨

ಗೋವಳರು ನಿರ್ಲಜ್ಜರದರೊಳು
ನೀವು ಗರುವರು ರಾಜಪುತ್ರರು
ಸಾವ ಬಯಸುವನೊಡನೆ ಬಂದಿರಿ ತಪ್ಪ ಮಾಡಿದಿರಿ
ನೀವು ಮಕ್ಕಳು ನಿಮ್ಮ ಹಿರಿಯರ
ಠಾವಿನಲಿ ಬುಧರಿಲ್ಲಲಾ ನಿಮ
ಗಾವ ಹದನಹುದೆನುತ ನುಡಿದನು ಭೀಮ ಫಲುಗುಣರ ೮೩

ಸಾಕಿದೇತಕೆ ಹೊಳ್ಳು ನುಡಿಗೆ ವಿ
ವೇಕಿಗಳು ಮೆಚ್ಚುವರೆ ಯುದ್ಧ
ವ್ಯಾಕರಣ ಪಾಂಡಿತ್ಯವುಳ್ಳರೆ ತೋರಿಸುವುದೆಮಗೆ
ಈ ಕಮಲನೇತ್ರಂಗೆ ಫಡ ನೀ
ನಾಕೆವಾಳನೆ ಶಿವಶಿವಾ ಜಗ
ದೇಕ ದೈವದ ಕೂಡೆ ದಂಡಿಯೆಯೆಂದನಾ ಭೀಮ ೮೪

ದಿಟ್ಟರಹಿರೋ ಸಾವನರಿಯದೆ
ಕೆಟ್ಟಿರಕಟಾ ಕಾಳು ಗೋಪನ
ಗೊಟ್ಟಿಯಾಟಕೆ ಗುರಿಗಳಾದಿರಿ ನಿಮ್ಮ ಗುರುಸಹಿತ
ಚಟ್ಟಳೆಯ ಚತುರಾಸ್ಯನಿವರೊಡ
ಹುಟ್ಟಿದರ ಸಮಜೋಳಿ ಗಡ ಜಗ
ಜಟ್ಟಿಗಳು ತಾವಿವರೆನುತ ತಲೆದೂಗಿದನು ಮಗಧ ೮೫

ಬೈದು ಫಲವೇನೆಮಗೆ ಮೇಳದ
ಮೈದುನರು ನೀವಲ್ಲಲೇ ದಳ
ವೈದೆ ನೂಕಲಿ ನಿಮ್ಮ ಮೂವರು ಸಹಿತ ನಮ್ಮೊಡನೆ
ಕೈದುವುಂಟೇ ತರಿಸಿ ಕೊಡಿಸುವೆ
ನೈದಿ ನೀವಾಳಾಗಿ ನಿಮ್ಮೊಡ
ನೈದುವೆನು ಬಲರಾಮನುಳಿದಾನೆಂದನಾ ಮಗಧ ೮೬

ಎಲವೊ ಬಾಹಿರ ಮಗಧ ಹಲಧರ
ನುಳಿಯೆ ಪಾಂಡವ ನೃಪರು ಪರಿಯಂ
ತಳವು ನಿನಗೊಬ್ಬಂಗೆ ಸೇರುವುದೇ ಮಹಾದೇವ
ಅಳಿವು ತಪ್ಪದು ನುಡಿಯೊಳಲ್ಪವ
ಬಳಸಲೇತಕೆ ವೀರನಹೆ ನ
ಮ್ಮೊಳಗೆ ಮೂವರೊಳೊಬ್ಬನನು ವರಿಸೆಂದನಸುರಾರಿ ೮೭

ಅಕಟ ನಿಮಗೀ ಸಮರವಾವ
ಶ್ಯಕವೆ ನಮಗಖ್ಯಾತಿಯಲ್ಲಿದು
ಸಕಲ ಜನವರಿದಿರಲೆಯೆನುತ ನೋಡಿದನು ತನ್ನವರ
ಪ್ರಕಟವೈ ನಿಮ್ಮಾಳುತನ ಯದು
ನಿಕರಕಾವಂಜುವೆವು ರಣ ನಾ
ಟಕ ಪಲಾಯನ ಪಂಡಿತರು ನೀವೆಂದನಾ ಮಗಧ ೮೮

ಪಾರ್ಥ ನೀ ಮಗುವೆಮ್ಮೊಡನೆ ರಣ
ದರ್ಥಿಯಾದರೆ ಭೀಮಸೇನ ಸ
ಮರ್ಥನಹನಾತಂಗೆ ಕೊಟ್ಟೆನು ಕಳನ ಕಾಳಗವ
ವ್ಯರ್ಥವಿದು ತಾ ಹೋಗಲಿನ್ನು ಪ
ರಾರ್ಥ ಕಂಟಕವಾಗಲೇತಕೆ
ತೀರ್ಥವೈಸಲೆ ಶಸ್ತ್ರಧಾರೆಯಿದೆಂದನಾ ಮಗಧ ೮೯

ತರಿಸಿದನು ಚಂದನದ ಸಾದಿನ
ಭರಣಿಗಳ ಕರ್ಪೂರ ವರಕ
ಸ್ತುರಿ ಜವಾಜಿ ಪ್ರಮುಖ ಬಹುವಿಧ ಯಕ್ಷಕರ್ದಮವ
ಹರಿ ವೃಕೋದರ ಪಾರ್ಥರಿದಿರಲಿ
ಭರಣಿಗಳ ನೂಕಿದನು ಮಾಲ್ಯಾಂ
ಬರ ವಿಲೇಪನದಿಂದಲಂಕರಿಸಿದರು ನಿಜತನುವ ೯೦

ಅಂಕಕಬ್ಬರು ಭಟರು ತಿಲಕಾ
ಲಂಕರಣಶೋಭೆಯಲಿ ರಣ ನಿ
ಶ್ಶಂಕರನುವಾದರು ಸುಕರ್ಪೂರ ವೀಳೆಯಂಗೊಂಡು
ಬಿಂಕದುಬ್ಬಿನ ರೋಮ ಪುಳಕದ
ಮುಂಕುಡಿಯ ಸುಮ್ಮಾನದಂಕೆಯ
ಝುಂಕೆಗಳ ಭರ ಭುಲ್ಲವಿಸಿದುದು ಭೀಮ ಮಾಗಧರ ೯೧

ರಣದೊಳಾವುದು ಕೈದು ಹಿರಿಯು
ಬ್ಬಣವೊ ಪರಿಘವೊ ಸುರಗಿಯೋ ಡೊಂ
ಕಣಿಯೊ ಗದೆಯೋ ಭಿಂಡಿವಾಳವೊ ಪರಶು ತೋಮರವೊ
ಕಣೆ ಧನುವೊ ಕಕ್ಕಡೆಯೊ ಮುಷ್ಟಿಯೊ
ಹಣಿದಕಾವುದು ಸದರವದರಲಿ
ಕೆಣಕಿ ನೋಡಾ ತನ್ನನೆಂದನು ಭೀಮ ಮಾಗಧನ ೯೨

ಆಯುಧಂಗಳಲೇನು ನೀ ನಾ
ಗಾಯುತದ ಬಲನೆಂಬರಾ ನುಡಿ
ವಾಯುವೋ ಕಲಿಭೀಮ ದಿಟವೋ ನೋಡಬೇಹುದಲೆ
ಆಯಿತೇ ಸಮಜೋಳಿ ನಿನಗದು
ಪಾಯುವೋ ಚೊಕ್ಕೆಯವೊ ನುಡಿ ಮನ
ದಾಯತವನನೆಗೆನುತ ಹತ್ತಾಹತ್ತಿಗನುವಾದ ೯೩

ಧರಣಿಪತಿ ಕೇಳ್ಮಾಗಧನ ಮಂ
ದಿರದ ರಾಜಾಂಗಣದೊಳವನೀ
ಸುರರು ನೋಟಕರಾದರಿಲ್ಲಿ ಮುರಾರಿ ಫಲುಗುಣರು
ಎರಡು ಬಲ ಮೋಹರಿಸಿ ನಿಂದುದು
ಪುರದ ಹೊರ ಬಾಹೆಯಲಿ ಕೃತ ಸಂ
ಚರಣ ಕಾರ್ತಿಕ ಶುದ್ಧ ಪಾಡ್ಯದೊಳಾಹವಾರಂಭ ೯೪

ಸಿಡಿಲು ಬೊಬ್ಬಿಡುವಂತೆ ಹೊಯ್ದರು
ಮುಡುಹುಗಳ ಮಝು ಪೂತು ಮಲ್ಲೆನು
ತಡಿಗಡಿಗೆ ನೂಕಿದರು ಲವಣೆಯ ನೀಡಿ ಸಾರದಲಿ
ತುಡುಕಲೀಯದೆ ತಿರುಗಿದರು ಗಡ
ಬಡಿಸಿ ದಂಡೆಯೊಳೊತ್ತಿದರು ಸಮ
ಚಡಿಸಿ ನಿಂದರು ನೀಲ ನಿಷಧಾಚಲಕೆ ಮಲೆವಂತೆ ೯೫

ಸಿಕ್ಕರೊಬ್ಬರಿಗೊಬ್ಬರುರೆ ಕೈ
ಮಿಕ್ಕುಹರಿಯರು ಕೊಂಡ ಹೆಜ್ಜೆಯ
ಠಕ್ಕಿನಲಿ ಮೈಗೊಡರು ತಿರಿಮುರಿವುಗಳ ಮಂಡಿಗಳ
ಇಕ್ಕಿದರು ಗಳಹತ್ತದಲಿ ಸಲೆ
ಮಿಕ್ಕು ಸತ್ರಾಣದಲಿ ಮಿಗೆ ಸರಿ
ವೊಕ್ಕು ಹಿಡಿದರು ಬಿನ್ನಣದ ಚೊಕ್ಕೆಯದ ಜೋಡಿಯಲಿ ೯೬

ಬಿಡಿಸಿ ಗಳಹತ್ತವನು ಡೊಕ್ಕರ
ಕೊಡೆ ಮುರಿವ ಸಕುಟುಂಬ ಡೊಕ್ಕರ
ಕಡಸಿ ಕತ್ತರಿಘಟ್ಟಿಸುವ ಗಳಹತ್ತಡೊಕ್ಕರವ
ತಡೆವ ಚೌವಂಗುಲ ದುವಂಗುಲ
ಕೊಡೆಮುರಿವ ಪಟ್ಟಸಕೆ ಚಾಚುವ
ಝಡಿತೆಗೊದಗುವ ಭಟರು ಹೆಣಗಿದರರಸ ಕೇಳೆಂದ ೯೭

ಎಳೆದು ದಣುವಟ್ಟೆಯಲಿ ಬೊಪ್ಪರ
ದೊಳಗೆ ಜಾಳಿಸಿ ಚಿಮ್ಮಿ ಝಡಿತೆಯ
ಸೆಳೆದು ಮುಡುಹಿನಲೌಕಿ ಬಿಗಿದರು ಪಟ್ಟ ಮುಡುಹಿನಲಿ
ಸುಳಿದು ಮರ್ಕಟ ಬಂಧದಲಿ ಕರ
ವಳಯದಲಿ ಕೈದುಡುಕಿ ಶಿರವ
ಟ್ಟಳೆಯ ಚಲ್ಲಣ ಪಟ್ಟಿಯವರೊದಗಿದರು ಪಟುಭಟರು ೯೮

ಅಗಡಿಯಲಿ ಲೋಟಿಸಿ ನಿರಂತರ
ಲಗಡಿಯಲಿ ಲಾಗಿಸಿ ನಿಬಂಧದ
ಬಿಗುಹುಗಳ ಕುಮ್ಮರಿಯ ಕುಹರದ ನಾಗಬಂಧಗಳ
ತೆಗಹುಗಳ ತೊಡಕುಗಳ ತುಳುಕಿನ
ಜಗಳುಗಳ ಜೋಡಣೆಯ ನಿಡು ಸು ೯೯
ಯ್ಯುಗಳ ಸೌರಂಭದ ಸಗಾಢರು ಹೊಕ್ಕು ಹೆಣಗಿದರು

ಧೂಳಿ ಕುಡಿದುದು ಬೆಮರನಾ ಕೆಂ
ಧೂಳಿ ನೆನೆದುದು ಬೆವರಿನಲಿ ತಳ
ಮೇಲು ನಿಮಿಷಕೆ ಮೇಲು ತಳ ಬಿಡುಹುಗಳ ಬಿಗುಹುಗಳ
ಸೂಳು ನಾಸಾ ಪುಟದ ಪವನನ
ತಾಳಿಗೆಯ ಕರ್ಪುರದ ಕವಳದ
ತೋಳ ತೆಕ್ಕೆಯ ತವಕಿಗರು ಹೆಣಗಿದರು ಪಟುಭಟರು ೧೦೦

ತೀರದಿಬ್ಬರ ಸತ್ವವವನಿಯ
ಸಾರದಿಬ್ಬರ ಬಲುಹುಗಾಣದು
ಪಾರುಖಾಣೆಯುವದಟರಿಬ್ಬರ ಭುಜ ಬಲಾಟೋಪ
ಸಾರವಳಿಯದು ಮುಳಿಸು ದರ್ಪದ
ಧಾರೆ ಮುರಿಯದು ಜಯದ ತೃಷ್ಣೆಯು
ತೋರಹತ್ತರು ಹೆಣಗಿದರು ಕಲಿಭೀಮ ಮಾಗಧರು ೧೦೧

ಪೂತು ಮಝ ಜಗಜಟ್ಟಿ ದಣು ಧಣು
ವಾತಸುತ ಪರಬಲ ಭಯಂಕರ
ಸೋತನೋ ಪ್ರತಿಮಲ್ಲನೆಂದರು ಕೃಷ್ಣ ಫಲುಗುಣರು
ಭೀತನಾದನು ಭೀಮನಹಿತ ವಿ
ಘಾತಿ ಮಾಗಧರಾಯ ಮಲ್ಲ
ವ್ರಾತ ಕುಲಗಿರಿ ವಜ್ರನೆಂದುದು ಮಗಧ ಪರಿವಾರ ೧೦೨

ಅಲಸಿದರು ಬಿನ್ನಣಕೆ ಬಿಗುಹಿನ
ಕಳಿವುಗಳ ಬೇಸರಿಕೆಯಲಿ ಕಡು
ಉಳಿ ಮಸಗಿ ಡಾವರಿಸಿ ಮನವನುಪಾಯ ಡಾವರಕೆ
ತೊಲಗಿ ನಿಂದರು ಕರ್ಪುರದ ತನಿ
ಹಳುಕನಣಲೊಳಗಡಸಿ ದಂಡೆಯು
ಬಲಿದು ಬರಸಿಡಿಲೆರಕವೆನೆ ತಾಗಿದರು ಬಳಸಿನಲಿ ೧೦೩

ಬಾಳ ಹೊಯ್ಲೋ ಸಿಡಿಲ ತೊಡರಿನ
ಸೂಳುಗಳೊ ಸಿಡಿದಲೆಯ ಗಿರಿಗಳ
ಬೀಳುಗಳೊ ಬಿರು ಹೊಯ್ಲು ಧಾರೆಯ ಕಿಡಿಯ ತುಂಡುಗಳೊ
ತೋಳ ನೆಗಹಿನ ಮುಷ್ಟಿ ಘಾತದ
ಮೇಲು ಘಾಯದ ಉಳಿಯ ಘೋಳಾ
ಘೋಳಿಗಳನಾರೆಣಿಸುವರು ಕಲಿಭೀಮ ಮಾಗಧರ ೧೦೪

ಕುಸಿದು ಘಾಯವ ಕಳೆದು ವಕ್ಷದ
ಬೆಸುಗೆ ಬಿಡೆ ಸಿಡಿದೆದ್ದು ಹೊಯ್ಲಿಗೆ
ಮುಸುಡ ತಿರುಹುವ ಮೈಯನೊಡ್ಡಿದಡೌಕಿ ಥಟ್ಟಿಸುವ
ಅಸಮಸೆಗೆ ಮೈಯಳುಕದೆರಗುವ
ಹುಸಿವ ಜಾರುವ ಹೊಳೆವ ಹಣುಗುವ
ಬೆಸುವ ಬಿಡಿಸುವ ದಿಷ್ಟಿವಾಳರು ಹೊಕ್ಕು ಹೆಣಗಿದರು ೧೦೫

ಪವನಜನ ರಾವಣನ ಝಾಡಿಯ
ತಿವಿತಗಳು ಚಾಣೂರ ಕೃಷ್ಣರ
ಜವಳಿ ಹೊಯ್ಲಿವರೊಳಗೆ ಜೋಡಿಸವೇನ ಹೇಳುವೆನು
ಶಿವನ ಡಮರುಗದಾಟವೋ ಭೈ
ರವನ ಫಣೆಗಣ್ಣಾಟವೋ ಬಿರು
ದಿವಿಗುಳಿನ ದೆಖ್ಖಾಳ ಮಸಗಿತು ಭೀಮ ಮಾಗಧರ ೧೦೬

ಕುಣಿದವಿಬ್ಬರ ಮುಷ್ಟಿಯಿಬ್ಬರ
ಹಣೆಯಲೆದೆಯಲಿ ಮೋರೆಯಲಿ ಭುಜ
ದಣಸಿನಲಿ ಕಂದದಲಿ ಬದಿಯಲುದರದಲಿ
ಝಣು ವಿರೋಧಿ ವಿಭಾಡ ಝಣು ಝಣು
ಝಣು ಜಗತ್ರಯ ಜಟ್ಟಿ ಝಣು ಝಣು
ಝಣು ಝಣೆಂಬಬ್ಬರಣೆ ಮಸಗಿದುದೆರಡು ಬಾಹೆಯಲಿ ೧೦೭

ಹೊಯ್ಲು ಹೊದರೆದ್ದವು ವಿಘಾತದ
ಕಯ್ಯುಳಿಯ ಕಡುಘಾಯ ಘಾಯಕೆ
ಮೆಯ್ಲವಣೆ ಲಂಬಿಸಿತು ಕಡುಹಿನ ಖತಿಯ ಕೈಮಸಕ
ಹೊಯ್ಲು ಹೊಗೆಗಳ ಹೋರಟೆಯ ವೇ
ಗಾಯ್ಲು ಮುಷ್ಟಾಮುಷ್ಟಿ ಗತಿಯ ದ್ಯ
ಥಾಯ್ಲುರಪ್ಪಳಿಸಿದರು ಪದ ಘಟ್ಟಣೆಗೆ ನೆಲ ಕುಸಿಯೆ ೧೦೮

ಆವ ಸಾಧನೆಯೋ ವಿಘಾತಿಯ
ಲಾವಣಿಗೆಗದ್ರಿಗಳು ಬಿರಿದವು
ಮೈವಳಿಯಲುಕ್ಕಿದುದು ಕಡುಹಿನ ಖತಿಯ ಕೈಮಸಕ
ತಾವರೆಯ ತೆತ್ತಿಗನ ಕುಮುದದ
ಜೀವಿಗನ ಮಿಗೆ ಮೇಲು ನೋಟದೊ
ಳಾ ವಿಗಡರುಗಳಡಸಿ ತಿವಿದಾಡಿದರು ಬೇಸರದೆ ೧೦೯

ತೆಗೆಯರರ್ಜುನ ಕೃಷ್ಣರೀತನ
ನುಗಿಯರವನವರವನನಿರುಳಿನ
ಹಗಲ ವಿವರಣೆಯಿಲ್ಲ ಮಜ್ಜನ ಭೋಜನಾದಿಗಳ
ಬಗೆಗೆ ತಾರರು ಬಾಹುಸತ್ವದ
ಹೊಗರು ಹೋಗದು ಮನದ ಖಾತಿಯ
ತೆಗಹು ತಗ್ಗದು ಹೊಕ್ಕು ತಿವಿದಾಡಿದರು ಬೇಸರದೆ ೧೧೦

ಸತ್ವ ಸವೆಯದು ಮನದ ಮುಳಿಸಿನ
ಬಿತ್ತು ಬೀಯದು ಜಯದ ಬಯಕೆಯ
ಸುತ್ತು ಸಡಿಲದು ಬಿಂಕ ಬೀಯದು ನೋಯದಾಟೋಪ
ತೆತ್ತ ಕೈ ಕಂಪಿಸದು ಮುಷ್ಟಿಯು
ಹತ್ತುಗೆಗೆ ಮನ ಝೋಂಪಿಸದು ಮದ
ವೆತ್ತಿ ಮೆಟ್ಟಿದರೊಬ್ಬರೊಬ್ಬರ ಮರ್ಮಘಾತದಲಿ ೧೧೧

ಅರಸ ಕೇಳೈದನೆಯ ದಿವಸದೊ
ಳುರು ಭಯಂಕರವಾಯ್ತು ಕದನದ
ಭರದೊಳೆಡೆದೆರಹಿಲ್ಲ ವಿಶ್ರಮವಿಲ್ಲ ನಿಮಿಷದಲಿ
ಎರಡು ದೆಸೆಯಲಿ ವೀಳೆಯದ ಕ
ರ್ಪುರದ ಕವಳದ ಕೈ ಚಳಕದಲಿ
ತೆರಹನಲ್ಲದೆ ಮತ್ತೆ ಕಾಣೆನು ಯುದ್ಧರಂಗದಲಿ ೧೧೨

ಭರದ ಭಾರಣೆಯಲಿ ಚತುರ್ದಶಿ
ಯಿರುಳು ಮಗಧನ ಬಾಹುಸತ್ವದ
ಮುರಿವು ಮೊಳೆತುದು ಶೌರ್ಯ ಸೆಡೆದುದು ಭಯದ ಬಿಗುಹಿನಲಿ
ಉರು ಪರಾಕ್ರಮ ತೇಜ ಪಡುವಣ
ತರಣಿಯಾದುದು ಧಟ್ಟಣೆಯ ಧರ
ಧುರಕೆ ನಿರ್ದ್ರವ ಜಿಹ್ವೆಯಾದುದು ನಿಮಿಷ ನಿಮಿಷದಲಿ ೧೧೩

ಬೇಸರಿಕೆ ಬೇರೂರಿದುದು ಜಯ
ದಾಸೆ ಜಾರಿತು ದಿಟ್ಟತನದ ವಿ
ಳಾಸ ಹಾರಿತು ಸುಪ್ರತಾಪದ ಕೆಂಪು ಕರಿದಾಯ್ತು
ಮೀಸಲಳಿದುದು ಮುಳಿಸು ಶೌರ್ಯದ
ವಾಸಿ ಪೈಸರವಾಯ್ತು ರಣದಾ
ವೇಶವಿಳಿದುದು ಮಗಧಪತಿಗಿದನರಿದನಸುರಾರಿ ೧೧೪

ಹೊರಗೆ ಬಲಿದೊಳಡಿಳ್ಳವನು ಪರ
ರರಿಯದಂತಿರೆ ತಿವಿವ ಮಗಧನ
ಪರಿಯನರಿದನು ದನುಜರಿಪು ಪರರಿಂಗಿತಜ್ಞನಲೆ
ಅರಿವುದರಿದೆ ಚರಾಚರಂಗಳ
ಹೊರಗೊಳಗು ತಾನಲ್ಲದಿಲ್ಲಿದ
ನರಿಯನೇ ಶಿವಯೆಂದನಾ ಜನಮೇಜಯನು ನಗುತ ೧೧೫

ಎಲೆಲೆ ಪವನಜ ಮಾಗಧೇಶ್ವರ
ನಳವನರಿದಾ ನಿನ್ನ ತಂದೆಯ
ಬಲುಹು ಕೊಂಡೀ ರಿಪುವ ಮುರಿ ನೆನೆ ನೆನೆ ಸಮೀರಣನ
ಬಲು ಮುಗಿಲು ಬಿರುಗಾಳಿಯೊಡ್ಡಿನೊ
ಳಳುಕದೇ ಘಡ ಬೇಗ ಮಾಡೆನೆ
ಕಲಿ ವೃಕೋದರನನಿಲರೂಪ ಧ್ಯಾನಪರನಾದ ೧೧೬

ಧ್ಯಾನದಲಿ ತನ್ಮಯತೆಯಾಗಲ
ನೂನ ಸಾಹಸನಾಗಿ ಮಗಧ ಮ
ಹಾ ನರೇಂದ್ರನ ತುಡುಕಿ ಹಿಡಿದನು ಮಲ್ಲಗಂಟಿನಲಿ
ಆ ನಗೆಯನೇವಣ್ಣಿಸುವೆನನು
ಮಾನಿಸದೆ ಬೀಸಿದನು ಬವಣಿಹೆಯ
ಭಾನುಮಂಡಲದಂತೆ ತಿರುಗಿದನಾ ಜರಾಸಂಧ ೧೧೭

ಬರಸೆಳೆದು ಕರದಿಂದ ಮಾಗಧ
ನೆರಡು ಕಾಲನು ಹಿಡಿದು ಸೀಳಿದು
ಧರೆಗೆ ಬಿಸುಟನು ಸಂಧಿಸಿದವಾ ಸೀಳ್ ತತುಕ್ಷಣಕೆ
ಮರಳಿ ಪವನಜ ಹಿಡಿದು ಸೀಳುವ
ನಿರದೆ ಮಗುಳವು ಸಂಧಿಸುವವೀ
ಪರಿ ಹಲವು ಸೂಳಿನಲಿ ಭೀಮನೊಳೊದಗಿದನು ಮಗಧ ೧೧೮

ಮುರಮಥನನದನರಿತು ನಿಜಕರ
ವೆರಡ ಪಲ್ಲಟವಾಗಿ ಸಂಧಿಸ
ಲರಿ ವಿದಾರಣ ಭೀಮ ನೋಡುತ ಮರಳಿ ಮಾಗಧನ
ಎರಡು ಸೀಳನು ಮಾಡಿ ಹೊಯ್ದ
ಬ್ಬರಿಸಿ ಪಲ್ಲಟವಾಗಿ ಸೇರಿಸಿ
ತಿರುಗಿಸಿದನೇನೆಂಬೆನುನ್ನತ ಬಾಹುಸತ್ವದಲಿ ೧೧೯

ತಿರುಹಿದನು ನೂರೆಂಟು ಸೂಳನು
ಧರೆಯೊಳಪ್ಪಳಿಸಿದನು ಬಳಿಕಾ
ಪುರ ಜನದ ಪರಿಜನದ ಹಾಹಾ ರವದ ರಹಿ ಮಸಗೆ
ತೆರಳಿತಲ್ಲಿಯದಲ್ಲಿ ಮಾಗಧ
ನರಸಿಯರು ಬಿಡುಮುಡಿಯ ಜಠರದ
ಕರದ ಬಿರು ಹೊಯ್ಲಿನಲಿ ಹೊರವಂಟರು ನಿಜಾಲಯವ ೧೨೦

ಮನೆ ಮನೆಯ ಕದವಿಕ್ಕಿದವು ನೃಪ
ವನಿತೆಯರು ಹೊರವಂಟರಲ್ಲಿಯ
ಮನುಜರಡಗಿದರದ್ರಿ ಗುಹೆಯಲಿ ಬೇಹ ಬೇಹವರು
ಜನದ ಕೋಲಾಹಲವನಾತನ
ತನುಜರೋಟವನವನ ಸತಿಯರ
ನಿನದವನು ಕಂಡಸುರಹರ ಸಾರಿದನು ಕೈ ನೆಗಹಿ ೧೨೧

ಅಂಜದಿರಿ ಪುರದವರು ವನಿತೆಯ
ರಂಜದಿರಿ ಮಾಗಧನ ಪರಿಜನ
ವಂಜದಿರಿ ಮಂತ್ರಿ ಪ್ರಧಾನ ಪಸಾಯ್ತರಾದವರು
ಅಂಜದಿರಿ ಕರೆಯಿವನ ಮಗನನು
ಭಂಜಿಸುವುದಿಲ್ಲಕಟ ಭೀಮ ಧ
ನಂಜಯರು ಕೊಟ್ಟಭಯವೆಂದನು ನಗುತ ಮುರವೈರಿ ೧೨೨

ಮುರಿದು ಕೆಡಹಿದರರಿಯನಲ್ಲಿಯ
ಸೆರೆಯ ಮನೆಗಳ ಹೊಕ್ಕು ರಾಯರ
ಸೆರೆಗಳನು ಬಿಡಿಸಿದನು ನಾನಾ ದ್ವೀಪ ಪಾಲಕರ
ಮೆರೆವ ಮಣಿಮಯ ರಶ್ಮಿವಳಯದ
ಮಿರುಪ ರಥವನು ಕೊಂಡು ನಗರದ
ಹೊರವಳಯದಲಿ ಬಂದು ಹೊಕ್ಕರು ತಮ್ಮ ಪಾಳೆಯವ ೧೨೩

ಪೌರಜನ ಕಾಣಿಕೆಗಳಲಿ ಕಂ
ಸಾರಿ ಭೀಮಾರ್ಜುನರ ಕಂಡುದು
ಧಾರುಣೀಪಾಲಕರು ಬಂದರು ಬೆನ್ನಲಿವರುಗಳ
ಘೋರವಡಗಿದುದೆಮ್ಮ ಕಾರಾ
ಗಾರ ಬಂಧವಿಮುಕ್ತವಾಯ್ತುಪ
ಕಾರವೆಮ್ಮಿಂದಾವುದೆಂದರು ನೃಪರು ಕೈಮುಗಿದು ೧೨೪

ನವೆದಿರತಿ ದುಃಖದಲಿ ಬಿಡುಗಡೆ
ಪವನಸುತನಿಂದಾಯ್ತು ನಿಜ ರಾ
ಜ್ಯವನು ಹೊಗುವುದು ಪೌರಜನ ಪರಿಜನವ ಸಲಹುವುದು
ಎಮಗೆ ಮಾಳ್ಪುಪಕಾರ ಬೇರಿ
ಲ್ಲವನಿಪನ ವರ ರಾಜಸೂಯಕೆ
ನಿವನಿವಗೆ ಮುಂಕೊಂಡು ಬಹುದೆಂದನು ಮುರಾಂತಕನು ೧೨೫

ನಗರಜನ ಮಂತ್ರಿ ಪ್ರಧಾನಾ
ದಿಗಳು ಸಹಿತ ಕುಮಾರನೈತಂ
ದಗಧರನ ಪದಕೆರಗಿದನು ಭೀಮಾರ್ಜುನಾಂಘ್ರಿಯಲಿ
ಮಗಗೆ ತಂದೆಯ ಮಾರ್ಗದಲಿ ನಂ
ಬುಗೆಯೊ ಕರುಣಾ ರಕ್ಷಣದ ನಂ
ಬುಗೆಯೊ ಚಿತ್ತವಿಸೆಂದರಾ ಮಂತ್ರಿಗಳು ಕೈಮುಗಿದು ೧೨೬

ಶವವ ಸಂಸ್ಕರಿಸುವುದು ಮಾಗಧ
ನವನಿಯಲಿ ಸಹದೇವಗಭಿಷೇ
ಕವನು ಮಾಡಿಸಿದಲ್ಲದೆತ್ತಲು ಮುರಿವುದಿಲ್ಲೆಂದು
ಅವರಿಗಭಯವನಿತ್ತು ಪರಿವಾ
ರವನು ಕಳುಹಿದರಿತ್ತಲಾತನ
ಯುವತಿಯರು ಬೇಡಿದರು ವಹ್ನಿಯ ಪಡೆದು ಮರಳಿದರು ೧೨೭

ಅವನ ಸಂಸ್ಕಾರದಲಿ ನಾರೀ
ನಿವಹ ಸಹಗತವಾಯ್ತು ವೈದಿಕ
ವಿವಿಧ ವಿಧಿಯಲಿ ಮಾಡಿದರು ಶೇಷಕ್ರಿಯಾದಿಗಳ
ಅವನ ಮಗ ಸಹದೇವನಾತಂ
ಗವನಿಯಲಿ ಪಟ್ಟಾಭಿಷೇಕೋ
ತ್ಸವವ ಮಾಡಿಸಿ ಕೊಟ್ಟನಭಯವನಾ ಪರಿಗ್ರಹಕೆ ೧೨೮

ತೇರುಗಳ ತೇಜಿಗಳನಾ ಭಂ
ಡಾರವನು ಗಜಘಟೆ ಸಹಿತ ವಿ
ಸ್ತಾರ ವಿಭವವನೊಪ್ಪುಗೊಂಡರು ಮಗಧ ನಂದನನ
ಧಾರುಣಿಯನವಗಿತ್ತು ಸಕಳ ಮ
ಹೀ ರಮಣರನು ಕಳುಹಿ ಬಂದನು
ವೀರನಾರಾಯಣನು ಶಕ್ರಪ್ರಸ್ಥಪುರವರಕೆ ೧೨೯

ಮೂರನೆಯ ಸಂಧಿ

ಸೂ. ಭೂಪತಿಯ ನೇಮದಲಿ ಜಂಬೂ
ದ್ವೀಪ ನವ ಖಂಡದಲಿ ಸಕಳ ಮ
ಹೀಪತಿಗಳನು ಗೆಲಿದು ಕಪ್ಪವ ತಂದನಾ ಪಾರ್ಥ

ಕೇಳು ಜನಮೇಜಯ ಧರಿತ್ರೀ
ಪಾಲ ಪಾಂಡವ ಪುರಿಗೆ ಲಕ್ಷ್ಮೀ
ಲೋಲ ಬಿಜಯಂಗೈದು ಭೀಮಾರ್ಜುನರ ಗಡಣದಲಿ
ಬಾಲೆಯರ ಕಡೆಗಣ್ಣ ಮಿಂಚಿನ
ಮಾಲೆಗಳ ಲಾಜಾಭಿವರುಷದ
ಲಾಲನೆಯ ರಚನೆಯಲಿ ಹೊಕ್ಕನು ರಾಜಮಂದಿರವ ೧

ಕಂಡು ಕೃಷ್ಣನನಿವರ ಕಾಣಿಸಿ
ಕೊಂಡನರಸು ಕ್ಷೇಮ ಕುಶಲವ
ಕಂಡು ಬೆಸಗೊಳಲೇಕೆ ಬಹು ಮಾತಿನಲಿ ಫಲವೇನು
ಕಂಡೆವೈ ನಿನ್ನಮಳ ಕರುಣಾ
ಖಂಡ ಜಲಧಿಯ ಭಕ್ತಜನಕಾ
ಖಂಡಲ ದ್ರುಮವೆಂದು ತಕ್ಕೈಸಿದನು ಹರಿಪದವ ೨

ನಡೆದ ಪರಿಯನು ರಿಪು ಪುರವನವ
ಗಡಿಸಿ ಹೊಕ್ಕಂದವನು ಮಗಧನ
ತೊಡಕಿ ತೋಟಿಯ ಮಾಡಿ ಭೀಮನ ಕಾದಿಸಿದ ಪರಿಯ
ಬಿಡದೆ ಹಗಲಿರುಳೊದಗಿ ವೈರಿಯ
ಕಡೆಯ ಕಾಣಿಸಿ ನೃಪರ ಸೆರೆಗಳ
ಬಿಡಿಸಿ ಬಂದಂದವನು ವಿಸ್ತರಿಸಿದನು ಮುರವೈರಿ ೩

ಎಲೆ ಮಹೀಪತಿ ನಿನ್ನ ಯಜ್ಞ
ಸ್ಥಲಕೆ ಬಾಧಕರಿಲ್ಲ ವನದಲಿ
ಪ್ಲಲಿಯಿರಲು ಗೋಧನ ಕುಲಕೆ ಯವಸಾಂಬು ಗೋಚರವೆ
ನೆಲನ ಗರುವರ ಗೊಂದಣವನಂ
ಡಲೆವನಖಿಳ ದ್ವೀಪಪತಿಗಳ
ನೆಳಲ ಸೈರಿಸನಳಿದನವನಿನ್ನೇನು ನಿನಗೆಂದ ೪

ರಚಿಸು ಯಜ್ಞಾರಂಭವನು ನೃಪ
ನಿಚಯವನು ದಾಯಾದ್ಯರನು ಬರಿ
ಸುಚಿತ ವಚನದಲೆಮ್ಮ ಕರೆಸಿದರಾ ಕ್ಷಣಕೆ ಬಹೆವು
ಸಚಿವರಾವೆಡೆ ಕಳುಹು ಬದರಿಯ
ರುಚಿರ ಋಷಿಗಳ ಕರೆಸು ನಿನ್ನಭಿ
ರುಚಿಗೆ ನಿಷ್ಪ್ರತ್ಯೂಹವೆಂದನು ದಾನವಧ್ವಂಸಿ ೫

ಎಂದು ಕಳುಹಿಸಿಕೊಂಡು ದ್ವಾರಕಿ
ಗಿಂದಿರಾಪತಿ ಮಾಗಧನ ರಥ
ದಿಂದ ಬಿಜಯಂಗೈದನಿನಿಬರು ಕಳುಹಿ ಮರಳಿದರು
ಬಂದ ವೇದವ್ಯಾಸ ಧೌಮ್ಯರ
ನಂದು ಕರೆಸಿ ಯುಧಿಷ್ಠಿರನು ನಿಜ
ಮಂದಿರದೊಳೊಪ್ಪಿದನು ಪರಿಮಿತ ಜನ ಸಮೂಹದಲಿ ೬

ಅಕಟ ನಾರದನೇಕೆ ಯಜ್ಞ
ಪ್ರಕಟವನು ಮಾಡಿದನು ನಮಗೀ
ಸಕಲ ಧರಣೀಕ್ಷತ್ರ ವರ್ಗದ ವಿಜಯ ಕಿರುಕುಳವೆ
ವಿಕಟ ಜಂಬೂದ್ವೀಪ ಪರಿಪಾ
ಲಕರು ನಮ್ಮನಿಬರಿಗೆ ಸದರವೆ
ಸುಕರವೇ ವರ ರಾಜಸೂಯವೆನುತ್ತ ಚಿಂತಿಸಿದ ೭

ಮಣಿವರಲ್ಲರಸುಗಳು ಮಾಡದೆ
ಮಣಿದೆವಾದರೆ ಕೀರ್ತಿ ಕಾಮಿನಿ
ಕುಣಿವಳೈ ತ್ರೈಜಗದ ಜಿಹ್ವಾರಂಗ ಮಧ್ಯದಲಿ
ಬಣಗುಗಳು ನಾವೆಂದು ನಾಕದ
ಗಣಿಕೆಯರು ನಗುವರು ಸುಯೋಧನ
ನಣಕವಾಡುವಡಾಯ್ತು ತೆರನೆಂದರಸ ಬಿಸುಸುಯ್ವ ೮

ಎನಲು ಧಿಮ್ಮನೆ ನಿಂದು ಭುಗಿಲೆಂ
ದನು ಕಿರೀಟಿ ವೃಥಾಭಿಯೋಗದ
ಮನಕತಕೆ ಮಾರಾಂಕವಾಯ್ತೇ ಹರ ಮಹಾದೇವ
ನಿನಗಕೀರ್ತಿ ವಧೂಟಿ ಕುಣಿವಳೆ
ಜನದ ಜಿಹ್ವಾರಂಗದಲಿ ಹಾ
ಯೆನುತ ತಲೆದೂಗಿದನು ಘನ ಶೌರ್ಯಾನುಭಾವದಲಿ ೯

ಮಣಿಯರೇ ಮನ್ನೆಯರು ನಾಕದ
ಗಣಿಕೆಯರು ನಗುವರೆ ಸುಯೋಧನ
ನಣಕವಾಡುವನೇ ಶಿವಾ ತಪ್ಪೇನು ತಪ್ಪೇನು
ಕಣೆಗಳಿವು ನಾಳಿನಲಿ ಕಬ್ಬಿನ
ಕಣೆಗಳೋ ಗಾಂಡೀವವಿದು ನಿ
ರ್ಗುಣವೊ ತಾನರ್ಜುನ ಮಹೀರುಹವೆಂದನಾ ಪಾರ್ಥ ೧೦

ಸಕಲ ಜಂಬೂದ್ವೀಪ ಪರಿ ಪಾ
ಲಕರ ಭಂಡಾರಾರ್ಥಕಿದೆ ಸು
ಪ್ರಕಟವೆಂದುಂಗುರವನಿತ್ತನು ನೃಪನ ಹಸ್ತದಲಿ
ಸುಕರ ದುಷ್ಕರವೆಂಬ ಚಿಂತಾ
ವಿಕಳತೆಗೆ ನೀ ಪಾತ್ರನೇ ಸಾ
ಧಕರನೇ ಸಂಹರಿಪೆ ತಾ ವೀಳೆಯವನೆನಗೆಂದ ೧೧

ಫೂತು ಫಲುಗುಣ ನಿನ್ನ ಕುಲಕಭಿ
ಜಾತ ಶೌರ್ಯಕೆ ಗರುವಿಕೆಗೆ ಸರಿ
ಮಾತನಾಡಿದೆ ಸಲುವುದೈ ನಿನಗೆನುತ ಕೊಂಡಾಡಿ
ಈತನುತ್ತರ ದೆಸೆಗೆ ಭೀಮನು
ಶಾತಮನ್ಯುವ ದೆಸೆಗೆ ಯಮಳರ
ಭೀತರಿದ್ದೆಸೆಗೆಂದು ವೇದವ್ಯಾಸ ನೇಮಿಸಿದ ೧೨

ನೆರಹಿ ಬಲವನು ನಾಲ್ಕು ದಿಕ್ಕಿಗೆ
ಪರುಠವಿಸಿದರು ಫಲುಗುಣನನು
ತ್ತರಕೆ ಮೂಡಲು ಪವನಸುತ ದಕ್ಷಿಣಕೆ ಸಹದೇವ
ವರುಣ ದಿಕ್ಕಿಗೆ ನಕುಲನೀ ನಾ
ಲ್ವರಿಗೆ ಕೊಟ್ಟನು ವೀಳೆಯವ ಹಿರಿ
ಯರರಸಿ ತಂದಳು ತಳಿಗೆ ತಂಬುಲ ಮಂಗಳಾರತಿಯ ೧೩

ಪರಮ ಲಗ್ನದೊಳಿಂದುಕೇಂದ್ರದೊ
ಳಿರಲು ಗುರು ಭಾರ್ಗವರು ಲಗ್ನದೊ
ಳಿರೆ ಶುಭಗ್ರಹದೃಷ್ಟಿ ಸಕಳೇಕಾದಶ ಸ್ಥಿತಿಯ
ಕರಣ ತಿಥಿ ನಕ್ಷತ್ರ ವಾರೋ
ತ್ಕರದಲಭಿಮತ ಸಿದ್ಧಿಯೋಗದೊ
ಳರಸನನುಜರು ದಿಗ್ವಿಜಯಕನುವಾದರೊಗ್ಗಿನಲಿ ೧೪

ಅರಸ ವೇದವ್ಯಾಸ ಧೌಮ್ಯಾ
ದ್ಯರಿಗೆ ಬಲವಂದೆರಗಿ ಕುಂತಿಯ
ಚರಣ ಧೂಳಿಯ ಕೊಂಡು ವಿಪ್ರವ್ರಜಕೆ ಕೈ ಮುಗಿದು
ಅರಸಿಯರು ದೂರ್ವಾಕ್ಷತೆಯ ದಧಿ
ವಿರಚಿತದ ಮಾಂಗಲ್ಯವನು ವಿ
ಸ್ತರಿಸೆ ಬಹುವಿಧ ವಾದ್ಯದಲಿ ಹೊರವಂಟರರಮನೆಯ ೧೫

ಅರಸ ಕೇಳೈ ಮೊದಲಲರ್ಜುನ
ಚರಿತವನು ವಿಸ್ತರದಲರುಪುವೆ
ನುರು ಪರಾಕ್ರಮಿ ನಡೆದು ಬಿಟ್ಟನು ಸಾಲ್ವ ದೇಶದಲಿ
ಪುರಕೆ ದೂತರ ಕಳುಹಲವನಿವ
ರುರವಣೆಗೆ ಮನವಳುಕಿ ಕೊಟ್ಟನು
ತುರಗ ಗಜ ರಥ ಧನ ವಿಲಾಸಿನಿ ಜನವನುಚಿತದಲಿ ೧೬

ಅವನ ಕಾಣಿಸಿಕೊಂಡು ರಾಜ್ಯದೊ
ಳವನ ನಿಲಿಸಿ ತದೀಯ ಸೇನಾ
ನಿವಹ ಸಹಿತಲ್ಲಿಂದ ನಡೆದನು ಮುಂದೆ ವಹಿಲದಲಿ
ಅವನಿಪತಿ ಕಟದೇವನೆಂಬವ
ನವಗಡಿಸಿ ಸರ್ವಸ್ವವನು ಕೊಂ
ಡವನ ಬಲಸಹಿತಾ ದ್ಯುಮತ್ಸೇನಕನ ರೆಝೋಂಪಿಸಿದ ೧೭

ಆತನನು ಗೆಲಿದನು ಸುನಾಭನ
ನೀತಿಗೆಡಿಸಿ ತದೀಯ ಸೇನಾ
ವ್ರಾತ ಸಹಿತಲ್ಲಿಂದ ಪ್ರತಿವಿಂಧ್ಯಕನನಪ್ಪಳಿಸಿ
ಆತನರ್ಥವಕೊಂಡು ತತ್ಪ್ರಾ
ಗ್ಜ್ಯೋತಿಷಕೆ ಥಾಳಿಟ್ಟನಲ್ಲಿ ಮ
ಹಾತಿಬಲನನೊಡನೆ ಬಲುಹಾಯ್ತರ್ಜುನನ ಸಮರ ೧೮

ಜೀನಕರ ಬೋಟಕ ಕಿರಾತರ
ನೂನಬಲ ಸಹಿತೀ ಮಹೀಪತಿ
ಸೂನು ಕಾದಿದನೀತನಲಿ ಭಗದತ್ತನೆಂಬವನು
ಈ ನರನ ಶರ ಜಾಲವದು ಕ
ಲ್ಪಾನಲನ ಕಾಲಾಟವಿದರೊಡ
ನಾನಲಿಂದ್ರಾದ್ಯರಿಗೆ ಸದರವೆ ರಾಯ ಕೇಳೆಂದ ೧೯

ಮುರಿಯದಾ ಬಲವೀತನುರುಬೆಗೆ
ಹರಿಯದೀ ಬಲವುಭಯ ಬಲದಲಿ
ಕುರಿದರಿಯ ಕಮ್ಮರಿಯ ಕಡಿತಕೆ ಕಾಣೆನವಧಿಗಳ
ಅರಿಯದೀತನ ದುರ್ಗವೀ ಬಲ
ದಿರಿವುಗಳ ಬೇಳಂಬವನು ಬೇ
ಸರದೆ ಕಾದಿದನೆಂಟು ದಿನ ಭಗದತ್ತನೀತನಲಿ ೨೦

ಆವನೈ ನೀನಧಿಕತರ ಸಂ
ಭಾವಿತನು ಹೇಳೆನೆ ಯುಧಿಷ್ಠಿರ
ದೇವನನುಜ ಕಣಾ ಧನಂಜಯನೆನಲು ಮಿಗೆ ಮೆಚ್ಚಿ
ನಾವು ನಿಮ್ಮಯ್ಯಂಗೆ ಸಖರಿಂ
ದಾವು ನಿನ್ನವರೇನು ಬೇಹುದು
ನೀವೆಮಗೆ ಕಡು ಮಾನ್ಯರೆಂದನು ಕಂಡನರ್ಜುನನ ೨೧

ಆದರೆಮಗೆಯು ದಿವಿಜಪತಿಯೋ
ಪಾದಿ ನೀವೆಮ್ಮಣ್ಣದೇವನ
ಮೇದಿನಿಯ ಸಾಮ್ರಾಜ್ಯ ಪದವಿಯು ರಾಜಸೂಯವನು
ಆದಿರಿಸಿ ಸಾಕೆನಲು ಗಜ ಹಯ
ವಾದಿಯಾದ ಸಮಸ್ತ ವಸ್ತುವ
ನೈದೆ ಕೊಟ್ಟನು ಫಲುಗುಣಂಗೆ ಸುಮಿತ್ರಭಾವದಲಿ ೨೨

ಒಂದು ತಿಂಗಳು ಪಲವು ಮನ್ನಣೆ
ಯಿಂದ ಮನ್ನಿಸಿ ತನ್ನ ಸೇನಾ
ವೃಂದವನು ಹೇಳಿದನು ಬಳಿಯಲಿ ಕಳುಹಿದನು ನರನ
ಮುಂದೆ ನಡೆದನು ರಾಮಗಿರಿಯಲಿ
ನಿಂದು ಕಪ್ಪವ ಕೊಂಡು ನಡೆದನು
ಮುಂದಣೀಶಾನ್ಯದಲಿ ಹೊಕ್ಕನು ಭುವನಪರ್ವತವ ೨೩

ಆ ಗಿರೀಂದ್ರ ನಿವಾಸಿಗಳ ಸರಿ
ಭಾಗ ಧನವನು ಕೊಂಡು ಬಳಿಕ ಮ
ಹಾ ಗಜಾಶ್ವನ ಸೂರೆಗೊಂಡನು ಮುಂದೆ ದಂಡೆತ್ತಿ
ಆ ಗಯಾಳರ ಗಾವಿಲರ ನಿ
ರ್ಭಾಗಧೇಯರ ಮಾಡಿಯುತ್ತರ
ಭಾಗದಲಿ ತಿರುಗಿತ್ತು ಪಾಳೆಯವರಸ ಕೇಳೆಂದ ೨೪

ಗಿರಿಯ ತಪ್ಪಲ ವನಚರರ ಸಂ
ಹರಿಸಿ ಮುಂದೆ ಬೃಹಂತಕನ ಕಾ
ತರಿಸಿ ಕಾಣಿಸಿಕೊಂಡು ಸೇನಾಬಿಂದು ನಗರಿಯಲಿ
ಇರವ ಮಾಡಿ ಸುದಾಮ ದೈತ್ಯರ
ನುರೆ ವಿಭಾಡಿಸಿ ಪಾರ್ವತೇಯರ
ಪುರವ ಕೊಂಡು ಪುಲೂಕರನು ಪೌರವರ ಭಂಗಿಸಿದ ೨೫

ಮುಂದೆ ದಸ್ಯುಗಳೇಳುವನು ಕ್ಷಣ
ದಿಂದ ಕಾಶ್ಮೀರಕರ ಸಾಧಿಸಿ
ಬಂದು ದಶಮಂಡಲದ ಲೋಹಿತರನು ವಿಭಾಡಿಸಿದ
ತಂದ ಕಪ್ಪದಲಾ ತ್ರಿಗರ್ತರ
ನಂದು ಹದುಳಿಸಿ ಗರುವಿತರನಾ
ಟಂದು ತೆಂಕಣದಾಭಿಚಾರಕ ರೂಷಕರ ಗೆಲಿದ ೨೬

ಧಾಳಿಯಿಟ್ಟನು ರೋಚಮಾನನ
ಮೇಲೆ ಕಪ್ಪವಕೊಂಡು ಬಿಟ್ಟುದು
ಪಾಳೆಯವು ಚಿತ್ರಾಯುಧನ ನರಸಿಂಹ ನಗರಿಯಲಿ
ಮೇಲೆ ವಂಗರ ಮುರಿದು ವರನೇ
ಪಾಳ ಕರ್ಪರ ಹೂಣೆಯರನು ವಿ
ಶಾಲ ಕಾಂಭೋಜಾದಿಗಳನಪ್ಪಳಿಸಿದನು ತಿರುಗಿ ೨೭

ಪಾರಶೀಕ ಕಿರಾತ ಬರ್ಬರ
ಪಾರಿಯಾತ್ರರ ಮುರಿದು ಸರ್ವ ವಿ
ಹಾರವನು ಮಾಡಿದನು ಮ್ಲೇಚ್ಛ ಸಹಸ್ರಕೋಟಿಗಳ
ಕ್ಷಾರಕರ ಹೂಣಕರ ಡೊಕ್ಕರ
ಪಾರಕರ ಬುರಸಹಣ ಭೂಪರೊ
ಳಾರುಭಟೆಯಲಿ ಕಾದಿ ಕೊಂಡನು ಸಕಲ ವಸ್ತುಗಳ ೨೮

ಬೆದರಿಸಿದನಾ ಹಿಮಗಿರಿಯ ಪಾ
ರ್ಶ್ವದ ಕಿರಾತರ ಮುಂದೆ ವಾಯು
ವ್ಯದಲಿ ಶೋಧಿಸಿ ಮರಳಿದನು ಹಿಮಗಿರಿಯ ಕುಕ್ಷಿಯಲಿ
ಪುದಿದ ನಾನಾ ದ್ರೋಣಿಗಳ ಮ
ಧ್ಯದ ಕಿರಾತ ಪುಳಿಂದ ನಿಚಯವ
ಸದೆದು ಹತ್ತಿದನಗ್ರಶಿಖರಕೆ ಪಾರ್ವತೀ ಪತನ ೨೯

ಎರಡು ಸಾವಿರ ಯೋಜನವು ಹಿಮ
ಗಿರಿಯ ಬಹಳೋತ್ಸೇಧ ಶಿಖರಕೆ
ಸರಿಸದಲಿ ಹತ್ತಿದುದು ಪಾಳಯವೇನ ಹೇಳುವೆನು
ಕರಿ ತುರಗ ವರ ರಥ ಪದಾತಿಗೆ
ಪರಿಗಣನೆಯೆಲ್ಲಿಯದು ಹಿಮಗಿರಿ
ಯೆರಡು ಸಾವಿರದಗಲ ತಿರುಗಿತು ರಾಯ ಕೇಳೆಂದ ೩೦

ಗಿರಿಯ ಕೋಣೆಯ ಕುಹರ ಗುಹೆಗಳ
ಗರುವರುಂಟೆಂದಾ ಪುಳಿಂದರ
ನೊರಸಿ ಕಾಣಿಸಿಕೊಂಡು ಕೊಂಡನು ಸಕಲ ವಸ್ತುಗಳ
ಗಿರಿಯನಿಳಿದುದು ನಡೆದು ಬಲ ಕಿಂ
ಪುರುಷ ಖಂಡದ ಬಹಳ ನದಿಗಳ
ಲೆರಡು ತಡಿಯಲಿ ತಳಿತು ಬಿಟ್ಟುದು ವನ ವನಂಗಳಲಿ ೩೧

ಅದು ಗಣನೆಗೊಂಬತ್ತು ಸಾವಿರ
ವದರೊಳಿದ್ದುದು ಯಕ್ಷಕಿನ್ನರ
ಸುದತಿಯರು ಕಿಂಪುರುಷರತಿರಾಗಿಗಳು ಸುಖಮಯರು
ಇದರ ಫಲ್ಲಣೆಗಾನಲೇನ
ಪ್ಪುದು ತದೀಯ ಜನಂಗಳಿತ್ತುದು
ಸುದತಿಯರನಾ ಮಂಡಲಕೆ ಮಿಟಾದ ವಸ್ತುಗಳ ೩೨

ಅಲ್ಲಿ ಕೆಲಕಡೆಯಲ್ಲಿ ಗಿರಿ ಗುಹೆ
ಯಲ್ಲಿ ನೆರೆದ ಕಿರಾತ ವರ್ಗವ
ಚೆಲ್ಲ ಬಡಿದಪಹರಿಸಿದನು ಬಹುವಿಧ ಮಹಾಧನವ
ಮೆಲ್ಲಮೆಲ್ಲನೆ ಹೇಮ ಕೂಟದ
ಕಲ್ಲನಡರಿದನಾ ಮಹಾದ್ರಿಗ
ಳೆಲ್ಲ ಹಿಮಶೈಲದ ಮಹೋನ್ನತಿ ಬಹಳವಿಸ್ತಾರ ೩೩

ಅದರಿತೀ ಬಲವಿದರ ಬೊಬ್ಬೆಯ
ಗಡಬಡೆಗೆ ಪದಘಟ್ಟಣೆಗೆ ಹುಡಿ
ಹುಡಿಯಲಾ ಗಿರಿಕೋಟೆ ಕೋಳಾಹಳದ ಕೊಬ್ಬಿನಲಿ
ನಡೆದು ಬಿಟ್ಟುದು ಗಿರಿಯ ತುದಿಯಲಿ
ತುಡುಕಿದುದು ನಾನಾ ದಿಗಂತವ
ತಡೆಯದದುಭುತ ವಾದ್ಯ ಗಜ ಹಯ ರಥದ ನಿರ್ಘೋಷ ೩೪

ಹೇಮಕೂಟದ ಗಿರಿಯ ಗಂಧ
ರ್ವಾಮರರ ಝೋಂಪಿಸಿದನವರು
ದ್ದಾಮ ವಸ್ತುವ ಕೊಂಡನಿಳಿದನು ಬಳಿಕ ಪರ್ವತವ
ಆ ಮಹಾ ಹರಿವರುಷದಲ್ಲಿಯ
ಸೀಮೆ ಯೋಜನ ನವ ಸಹಸ್ರ ವಿ
ರಾಮವದರೊಳಗೆಲ್ಲ ವಿವರಿಸಲರಿಯೆ ನಾನೆಂದ ೩೫

ಉತ್ತರೋತ್ತರ ದೇವಭೂಮಿಗ
ಳೆತ್ತಣವರೀ ದಳ ನಿಚಯ ತಾ
ನೆತ್ತ ಭೂರಿಧ್ವನಿಯನೀ ಗಜಬಜವನೀ ಜನವ
ಎತ್ತಲೆಂದರಿಯರು ವಿನೋದಕೆ
ತೆತ್ತರಲ್ಲಿಯ ಪಕ್ಷಿಮೃಗ ಹಯ
ವುತ್ತಮಾಂಗನೆಯರನು ಮನ್ನಿಸಿ ಕಂಡು ಫಲುಗುಣಗೆ ೩೬

ಎರಡು ಕಡೆಯಂಬುಧಿಯ ಪಾರ್ಶ್ವದ
ದುರುಳರನು ಧಟ್ಟಿಸಿ ತದೀಯರು
ವೆರಸಿ ಬಡಗಲು ನಡೆದುದಲ್ಲಿಯ ನಿಷಧ ಪರ್ವತಕೆ
ಎರಡು ಸಾವಿರ ಯೋಜನದ ತುದಿ
ವರೆಗೆ ಹತ್ತಿತು ಬಿಟ್ಟಿತಾ ಗಿರಿ
ಬಿರಿಯೆ ಬಿರು ಸೂಳೈಸಿದವು ನಿಸ್ಸಾಳ ಕೋಟಿಗಳು ೩೭

ಮೇಲೆ ನಿಷಧಾಚಲದ ಸುತ್ತಲು
ಧಾಳಿ ಹರಿದುದು ದೆಸೆದೆಸೆಯ ದೈ
ತ್ಯಾಳಿ ಹೆಚ್ಚಿದ ದುಷ್ಟ ದಾನವ ಮಂಡಲೇಶ್ವರರ
ಶೈಲ ಶಿಖರದೊಳುಳ್ಳ ದೊರೆಗಳ
ತಾಳು ಬಾಗಿಲ ಕುತ್ತರಲಿ ಕಾ
ಲಾಳು ಹೊಕ್ಕುದು ಹೊಯ್ದು ಕಟ್ಟಿತು ಕೂಡೆ ಸೂರೆಗಳ ೩೮

ಗಿರಿಯ ಶಿಖರದ ಮೇಲ್ಕಡೆಯನಾ
ಚರಿಸಿ ನಿಷಧಾಚಲವನಿಳಿದುದು
ನರನ ಪಾಳೆಯ ಬಿಟ್ಟುದಾಗಲಿಳಾ ವೃತದ ಮೇಲೆ
ಅರಸ ಕೇಳೊಂಬತ್ತು ಸಾವಿರ
ಪರಿಗಣಿತ ಯೋಜನದ ನೆಲ ಸುರ
ಗಿರಿಯ ಸುತ್ತಣ ದೇಶವತಿ ವರುಣೀಯುತರವೆಂದ ೩೯

ಜೋಣಿಗಾನುವರಿಲ್ಲ ಪಾರ್ಥನ
ಬಾಣಕಿದಿರಾರುಂಟು ವಾದ್ಯ
ಶ್ರೇಣಿ ಚಾತುರ್ಬಲದ ಫುಲ್ಲಣೆಗಿಲ್ಲ ಗರ್ವಿತರು
ಹೂಣೆ ಹೊಕ್ಕನು ಕನಕ ಶೈಲ
ದ್ರೋಣಿಗಳ ದುರ್ಬಲ ಸುರೌಘವ
ನಾಣೆಗಂಜಿಸಿ ಕಳೆದುಕೊಂಡನು ಸಕಲ ವಸ್ತುಗಳ ೪೦

ಹರಿದು ಹತ್ತಿತು ಗಂಧಮಾದನ
ಗಿರಿಯ ಸುತ್ತಣ ಯಕ್ಷ ವಿದ್ಯಾ
ಧರರನಂಜಿಸಿ ಕೊಂಡನಲ್ಲಿಯ ಸಾರ ವಸ್ತುಗಳ
ಗಿರಿಯನಿಳಿದರು ಜಂಬು ನೇರಿಲ
ಮರನ ಕಂಡರು ಗಗನ ಚುಂಬಿತ
ವೆರಡು ಸಾವಿರ ಯೋಜನಾಂತರದೊಳತಿ ವಿಳಾಸದಲಿ ೪೧

ಅದರ ಫಲ ಹೇರಾನೆಗಳ ತೋ
ರದಲಿಹವು ಗಿರಿಸಾರ ಶಿಲೆಗಳ
ಹೊದರಿನಲಿ ಬಿದ್ದೊಡೆದು ಹೊಳೆಯಾದುದು ಮಹಾರಸದ
ಅದು ಸುಧಾಮಯವಾಯ್ತು ಜಂಬೂ
ನದಿ ಜಲಸ್ಪರ್ಶದಲಿ ಜಾಂಬೂ
ನದ ಸುವರ್ಣವೆಯಾದುದಾ ನದಿಯೆರಡು ತಡಿವಿಡಿದು ೪೨

ಆ ರಸೋದಕ ಪಾನವೇ ಸಂ
ಸಾರ ಸೌಖ್ಯದ ಸಿದ್ಧಿಯಿತರಾ
ಹಾರವಿಂಧನ ತಂಡುಲಾಗ್ನಿಕ್ರಮ ವಿಧಾನವನು
ನಾರಿಯರು ಸಹಿತಲ್ಲಿ ಸಿದ್ಧರು
ಚಾರಣರು ರಮಣೀಯ ತೀರ ವಿ
ಹಾರಿಗಳು ಬಹುರತ್ನದಿಂ ಮನ್ನಿಸಿದರರ್ಜುನನ ೪೩

ಕೇಳಿ ಸೊಗಸಿದ ವಸ್ತುವಿಗೆ ಕ
ಣ್ಣಾಲಿ ಬಿದ್ದಣವಾಯ್ತುಲಾ ಸುರ
ಪಾಲ ಪದವಿದರೊರೆಗೆ ಬಹುದೇ ತೀರವಾಸಿಗಳ
ಧಾಳಿ ಧಟ್ಟಣೆಗಳನು ಮಾಣಿಸಿ
ಪಾಳೆಯವನು ಪವನ ಸರೋವರ
ವೇಲೆಯಲಿ ಬಿಡಿಸಿದನು ಜಂಬೂನದಿಯ ತೀರದಲಿ ೪೪

ಲಲಿತ ದಿವ್ಯಾಭರಣ ರತ್ನಾ
ವಳಿಯನನುಕರಿಸಿದನು ಪಾಳೆಯ
ಸುಳಿದುದಮರಾಚಲದ ಕೇಸರ ಶಿಖರಿಗಳ ಕಳೆದು
ಹೊಳೆ ಹೊಳೆವ ಮೇರುವಿನ ಸುತ್ತಣ
ವಳಯದರ್ಥವನಾಕರಿಸಿ ಕೈ
ವಳಿಸಿ ಬಿಟ್ಟನು ಹೊಕ್ಕಿಳಾವೃತವರುಷ ಸೀಮೆಯಲಿ ೪೫

ಸೇನೆ ಪಡುವಲು ತಿರುಗಿ ಸುತ್ತಣ
ವಾನುಪೂರ್ವಿಯ ಗಂಧಮಾದನ
ಸಾನುವನು ವೆಂಠಣಿಸಿಯಡರಿತು ಜೋಣಿಶೃಂಗದಲಿ
ಆ ನಗೇಂದ್ರನನಿಳಿದು ಪಡುವಣ
ಕಾನನಂಗಳ ಕೇತುಮಾಲದ
ಕಾನನಂಗಳ ಕಳೆದು ಬಿಟ್ಟುದು ಸೇನೆ ಬಳಸಿನಲಿ ೪೬

ಅಲ್ಲಿ ಸಾಗರ ತೀರ ಪರಿಯಂ
ತೆಲ್ಲಿ ಗಜಹಯವೆಲ್ಲಿ ಸುದತಿಯ
ರೆಲ್ಲಿ ಮಣಿಗಣವೆಲ್ಲಿ ಬಹುಧನವೆಲ್ಲಿ ರಮಣೀಯ
ಅಲ್ಲಿಗಲ್ಲಿಗೆ ನಡೆದು ಸಾಧಿಸಿ
ಕೆಲ್ಲೆ ಕುಹರದ ಕೋಣೆ ಬಾಗುಗ
ಳೆಲ್ಲವನು ಹೊಕ್ಕರಿಸಿ ತೆರಳಿಚಿದನು ಮಹಾಧನವ ೪೭

ಎಡಕಡೆಯಲೊಂಬತ್ತು ಸಾವಿರ
ನಡು ನೆಲನನಾಕರಿಸಿ ಮೂಡಣ
ಕಡೆಗೆ ತಿರುಗಿತು ಗಂಧಮಾದನ ಗಿರಿಯನೇರಿಳಿದು
ನಡೆದಿಳಾವೃತದೊಳಗೆ ಬಿಟ್ಟುದು
ಪಡೆ ಸುರಾದ್ರಿಯನುಳುಹಿ ಬಲದಲಿ
ನಡೆಯಲತಿ ದೂರದಲಿ ಕಂಡರು ಮಂದರಾಚಲವ ೪೮

ಇದುವೆ ಕಡೆಗೋಲಾಯ್ತು ಕಡೆವಂ
ದುದಧಿಯನು ತಾನಿದು ಮಹಾಗಿರಿ
ಯಿದರ ಬಿಂಕವ ನೋಡಬೇಕೆಂದರ್ಜುನನ ಸೇನೆ
ಒದರಿ ಹತ್ತಿತು ನಡುವಣರೆ ದು
ರ್ಗದಲಿ ಬೆಟ್ಟಂಗಳಲಿ ನೃಪರಿ
ದ್ದುದು ಮಹಾಹವವಾಯ್ತು ಪಾರ್ಥನ ಜೋಣಿಯವರೊಡನೆ ೪೯

ಇಳುಹಿದರು ಚೂಣಿಯನು ಮುಂದರೆ
ನೆಲೆಯ ಭಟರೌಕಿದರು ಭಾರಿಯ
ತಲೆವರಿಗೆಗಳಲೊತ್ತಿದರು ಹೊಗಿಸಿದರು ದುರ್ಗವನು
ಕಲುವಳೆಯ ಕೋಲಾಹಲಕ್ಕಿವ
ರಳುಕದಿರಿದರು ಸುರಗಿಯಲಿ ತೆನೆ
ವಳಿಯ ಹಿಡಿದರು ಹೊಯ್ದು ಕೇಶಾಕೇಶಿ ಯುದ್ಧದಲಿ ೫೦

ಶಕರು ಖದ್ಯೋತ ಪ್ರತಾಪರು
ವಿಕಳ ಚಿಂಫರು ದೀರ್ಘಮಯ ವೇ
ಣಿಕರು ಪಶುಪಾಲಕ ಪುಳಿಂದರು ಕಂಕಣಾಹ್ವಯರು
ಸಕಲ ದಸುಗಳೈದೆ ಸೋತುದು
ವಿಕಳ ಬಲವೊಪ್ಪಿಸಿತು ಸರ್ವ
ಸ್ವಕವ ಸಂಧಾನದಲಿ ನೆಲೆಯಾಯ್ತಲ್ಲಿಯರ್ಜುನಗೆ ೫೧

ಶೋಧಿಸಿದನಾ ಗಿರಿಯನಾಚೆಯ
ಹಾದಿಯಲಿ ಹೊರವಂಟು ಬರೆ ಮರಿ
ಯಾದೆಗಿಕ್ಕಿದ ಬೆಟ್ಟವಿದ್ದುದು ಮಾಲ್ಯವಂತ ಗಿರಿ
ಭೇದಿಸಿದನದರೊಳಗು ಹೊರಗಿನ
ಲಾದ ವಸ್ತುವ ಕೊಂಡು ತಚ್ಛೈ
ಲೋದರವನೇರಿಳಿದು ಭದ್ರಾಶ್ವಕ್ಕೆ ನಡೆತಂದ ೫೨

ಅದು ಮಹಾ ರಮಣೀಯತರವಂ
ತದರೊಳಿದ್ದುದು ಶುದ್ಧಭೋಗಾ
ಸ್ಪದರು ಯಕ್ಷೋರಕ್ಷಗಂಧರ್ವಾಪ್ಸರೋ ನಿಕರ
ಕುದುರೆ ರಥ ಗಜ ಪತ್ತಿ ನಿರ್ಘೋ
ಷದಲಿ ಬೆಬ್ಬಳಿಯಾಯ್ತು ಬೇಳಂ
ಬದ ವಿಘಾತಿಗೆ ಸಿಲುಕಿ ತೆತ್ತುದು ಸಕಲ ವಸ್ತುಗಳ ೫೩

ದೊರಕಿತಲ್ಲಿಯಪೂರ್ವ ವಸ್ತೂ
ತ್ಕರ ಸಮುದ್ರದ್ವೀಪ ಪರಿಯಂ
ತರ ನಡೆದನೊಂಬತ್ತು ಸಾವಿರ ಯೋಜನಾಂತರವ
ತಿರುಗಿದನು ಭದ್ರಾಶ್ವಕವನಾ
ಕರಿಸಿ ಬಡಗಲು ನಡೆದರಲ್ಲಿಯ
ಗಿರಿಯ ಕಂಡರು ಹತ್ತಿದರು ಹರುಷದಲಿ ಬೊಬ್ಬಿಡುತ ೫೪

ನೀಲ ಗಿರಿಯಗ್ರದಲಿ ಬಿಟ್ಟುದು
ಪಾಳೆಯವು ಬೊಬ್ಬೆಯಲಿ ದಿಕ್ಕಿನ
ಮೂಲೆ ಬಿರಿದುದು ಜರಿದವದ್ರಿಗಳೇನನುಸುರುವೆನು
ಮೇಲು ದುರ್ಗದ ಸಂಧಿಗೊಂದಿಯೊ
ಳಾಳು ಹರಿದುದು ಸೂರೆಗೊಂಡು ವಿ
ಶಾಲ ವಸ್ತುವ ತಂದರಲ್ಲಿದ್ದರಸುಗಳ ಗೆಲಿದು ೫೫

ಎರಡು ಸಾವಿರದುದ್ದವದು ಮ
ತ್ತೆರಡು ಸಾವಿರದಗಲವದನಾ
ಕರಿಸಿ ರಮ್ಯಕ ಭೂಮಿಗಿಳಿದರು ಪೊಕ್ಕರಾ ನೆಲನ
ಅರಸ ಕೇಳಲ್ಲಲ್ಲಿ ಸುಮನೋ
ಹರದ ವಸ್ತುವ ಕೊಂಡು ನವ ಸಾ
ವಿರದಸಗಟಿಕೆ ಸುತ್ತಿ ಬಂದರು ಗೆಲಿದು ಗರ್ವಿತರ ೫೬

ಅರಸ ಕೇಳಲ್ಲಿಂದ ಬಡಗಲು
ಹರಿದು ಬಿಟ್ಟರು ಹತ್ತಿದರು ಬೇ
ಸರದೆ ಕಲುದರಿಗಳಲಿ ಬಹಳ ಶ್ವೇತಪರ್ವತವ
ಗಿರಿಯ ತುದಿಗಳ ತೋಟದಲಿ ಗ
ಹ್ವರದ ಕೊಳ್ಳದ ಕೋಹಿನಲಿ ಹೊ
ಕ್ಕಿರಿದು ಶೋಧಿಸಿ ಕೊಂಡರಲ್ಲಿಯ ಸಾರವಸ್ತುಗಳ ೫೭

ಇಳಿದನಾ ಗಿರಿಯನು ಹಿರಣ್ಮಯ
ದೊಳಗೆ ಬಿಟ್ಟನು ಪಾಳೆಯವ ತ
ದ್ವಲಯ ಮಿಗಿಲೊಂಬತ್ತು ಸಾವಿರ ಯೋಜನಾಂತರವ
ಬಳಸಿ ಬಂದನು ವಿಮಲ ಸೌಧಾ
ವಳಿಯ ನೆಲೆಯುಪ್ಪರಿಗೆಗಳ ವರ
ಲಲನೆಯರು ಕಂಡೀತನನು ಹೊಗಳಿದರು ತಮ ತಮಗೆ ೫೮

ಈತ ಭಾರತ ವರುಷ ಪತಿಯನು
ಜಾತ ಗಡ ತತ್ಕರ್ಮ ಭೂಮಿಯ
ಲೀತನಧಿಪತಿ ಗೆಲಿದನಿತ್ತಲು ದೇವಭೂಮಿಪರ
ಈಗ ಗೌರೀಸುತನವೋಲ್ ಪುರು
ಹೂತ ತನಯನ ವೋಲು ಭುವನ
ಖ್ಯಾತನೆಂದಾ ಸ್ತ್ರೀಕಟಕ ಕೊಂಡಾಡಿತರ್ಜುನನ ೫೯

ತನ ತನಗೆ ತರುಣಿಯರು ಹೂವಿನ
ತನಿವಳೆಯ ಕರೆದರು ಕನತ್ಕಾಂ
ಚನ ವಿಭೂಷಣ ರತ್ನಚಯ ಪೂರಿತದ ಪೆಟ್ಟಿಗೆಯು
ವನಿತೆಯರನಾ ದೇಶದಲಿ ಮೀ
ಟೆನಿಪರನು ಮೃಗಪಕ್ಷಿ ಕೃಷ್ಣಾ
ಜಿನವನಂತವನಿತ್ತು ಸತ್ಕರಿಸಿದರು ಫಲುಗುಣನ ೬೦

ಧಾರುಣೀಪತಿ ಕೇಳು ದಳ ನಡು
ದಾರಿ ಬಡಗಣ ಶೃಂಗಪರ್ವತ
ದೋರೆಯಲಿ ದೊರೆಗಳನು ಘಟ್ಟಿಸಿ ಸೆಳೆದು ಬಹು ಧನವ
ಭಾರಣೆಯ ಮುಂಗುಡಿಯ ಕೊಳ್ಳಿಗ
ಳೋರಣಿಸಿ ತುದಿಗೇರಿ ಸಿದ್ಧರ
ಚಾರಣರ ವಿದ್ಯಾಧರರ ಮುತ್ತಿದರು ಮನ್ನಿಸದೆ ೬೧

ಅರಸು ಮೋಹರ ಹತ್ತಿತಾ ಗಿರಿ
ಎರಡು ಸಾವಿರದಗಲವದರಲಿ
ತುರುಗಿ ಬಿಟ್ಟಿತು ಸೇನೆ ಸೂಳೈಸಿದವು ನಿಸ್ಸಾಳ
ಬಿರಿದುದಾ ಗಿರಿ ಕೆಳಗಣುತ್ತರ
ಕುರುಗಳೆದೆ ಜರ್ಝರಿತವಾಯ್ತು
ಬ್ಬರಕೆ ಬಡಗಣ ಕಡಲು ಕದಡಿತು ತಳದ ತಾಮ್ರಗಳ ೬೨

ನೆರೆದರಲ್ಲಿಯ ನೃಪರು ದೂತರ
ಹರಿಯ ಬಿಟ್ಟರು ಪಾರ್ಥನಿಪ್ಪೆಡೆ
ಗರಸ ಕೇಳವರುಗಳು ಬಂದರು ಕಂಡರರ್ಜುನನ
ಗಿರಿಯನಿಳಿಯದಿರಿತ್ತಲುತ್ತರ
ಕುರುಗಳಿಹ ಸಂಸ್ಥಾನವಿದು ಗೋ
ಚರಿಸಲರಿಯದು ನರರ ಕಾಲ್ಗಳಿಗೆಂದರವರಂದು ೬೩

ಅಲ್ಲದಾಕ್ರಮಿಸಿದರೆ ನಿನಗವ
ರಲ್ಲಿ ಕಾಣಿಕೆ ದೊರಕಲರಿಯದು
ಬಲ್ಲಿದವರುತ್ತರದ ಕುರುಗಳು ನಿನಗೆ ಬಾಂಧವರು
ಗೆಲ್ಲದಲಿ ಫಲವಿಲ್ಲ ಸಾಹಸ
ವಲ್ಲಿ ಮೆರೆಯದು ಮರ್ತ್ಯ ದೇಹದೊ
ಳಲ್ಲಿ ಸುಳಿವುದು ಭಾರವೆಂದರು ಚರರು ಫಲುಗುಣಗೆ ೬೪

ಮಾಣಲದು ನಮಗವರು ಬಂಧು
ಶ್ರೇಣಿಗಳು ಗಡ ಹೋಗಲದು ಕ
ಟ್ಟಾಣೆಯಾವುದು ನಿಮ್ಮ ದೇಶದೊಳುಳ್ಳ ವಸ್ತುಗಳ
ವಾಣಿಯವ ಮಾಡದೆ ಸುಯಜ್ಞದ
ಕಾಣಿಕೆಯನೀವುದು ಯುಧಿಷ್ಠಿರ
ನಾಣೆ ನಿಮಗೆನೆ ತಂದು ಕೊಟ್ಟರು ಸಕಲ ವಸ್ತುಗಳ ೬೫

ತಿರುಗಿತಲ್ಲಿಂದಿತ್ತ ಪಾಳೆಯ
ಮುರಿದು ಬಿಟ್ಟು ಹಿರಣ್ಮಯವನಾ
ಕರಿಸಿ ರಮ್ಯಕದಿಂದಿಳಾವೃತದಿಂದ ದಕ್ಷಿಣಕೆ
ಭರದಿನೈದುತ ಹರಿವರುಷ ಕಿಂ
ಪುರುಷವನು ದಾಟುತ ಹಿಮಾನ್ವಿತ
ಗಿರಿಯನೇರಿದುದಿಳಿದು ಬಂದುದು ತೆಂಕ ಮುಖವಾಗಿ ೬೬

ಕಳುಹಿ ಕಳೆದನು ಹಿಂದೆ ಕೂಡಿದ
ಬಲವನವರವರೆಲ್ಲ ಯಾಗ
ಸ್ಥಳಕೆ ಬಹ ನೇಮದಲಿ ಹರಿದುದು ನಿಜ ಪುರಂಗಳಿಗೆ
ನೆಲನನಗಲದ ವಸ್ತುವಿದನೆಂ
ತಳವಡಿಸಿದನೊ ಶಿವಯೆನುತ ಸುರ
ರುಲಿಯೆ ಹೊಕ್ಕನು ಪಾರ್ಥನಿಂದ್ರಪ್ರಸ್ಥ ಪುರವರವ ೬೭

ನಾಲ್ಕನೆಯ ಸಂಧಿ

ಸೂ. ಯಾಗಸಿದ್ಧಿಗೆ ನಡೆದು ಪೂರ್ವ ವಿ
ಭಾಗದಲಿ ಭೂಮಿಪರ ಕೈಯಲಿ
ಸಾಗರೋಪಮ ಧನವ ಮೇಳೈಸಿದನು ಕಲಿ ಭೀಮ

ಕೇಳು ಜನಮೇಜಯ ಧರಿತ್ರೀ
ಪಾಲ ಯಮ ನಂದನನ ಭಾಗ್ಯದ
ಹೋಲಿಕೆಗೆ ಬಹರುಂಟೆ ನಳ ನಹುಷಾದಿ ರಾಯರಲಿ
ಆಳು ನಡೆದುದು ಭೀಮಸೇನನ
ಧಾಳಿಯಿದೆಯೆನೆ ತೆತ್ತುದವನೀ
ಪಾಲಕರು ತಂತಮ್ಮ ನಿಜ ವಿತ್ತಾನುರೂಪದಲಿ ೧

ನಡೆದು ಶೋಧಿಸಿ ರೋಚಮಾನನ
ಹಿಡಿದು ಬಿಟ್ಟನು ಸರ್ವ ವಿತ್ತವ
ನಡಕಿತನಿಲಜನಾಳು ಮುಂದಣ ಚೇದಿ ದೇಶದಲಿ
ಘುಡಿ ಘುಡಿಸೆ ನಿಸ್ಸಾಳವೀ ಗಡ
ಬಡೆಯಿದೇನೆನೆ ಭೀಮಸೇನನ
ಪಡೆಯೆನಲು ಶಿಶುಪಾಲ ಬಂದನು ಕಂಡನುಚಿತದಲಿ ೨

ಏನು ಬಂದೆಯಪೂರ್ವವೆನೆ ಯಾ
ಗಾನುರಾಗವನರುಪಲತಿ ಸು
ಮ್ಮಾನದಲಿ ಶಿಶುಪಾಲ ಹೇರಿಸಿದನು ಮಹಾಧನವ
ಮಾನಿಸರ ಕಳುಹಿದರೆ ಸಾಲದೆ
ನೀನಿದೇಕೆಂದುಚಿತದಲಿ ಸ
ನ್ಮಾನಿಸುತ ನಿಲಿಸಿದನು ತಿಂಗಳು ಪವನ ನಂದನನ ೩

ನಡೆದು ಮುಂದೆ ಕಳಿಂಗ ದೇಶದೊ
ಳಡಸಿ ಬಿಟ್ಟನು ಶೋಣಿವಂತನ
ಹಿಡಿದು ಕಪ್ಪವ ಕೊಂಡು ಸದೆದನು ಕೋಸಲೇಶ್ವರನ
ಅಡಕಿತಲ್ಲಿಯ ಧನ ಪಯೋಧಿಯ
ಕಡೆಯ ಕೋಟೆಯ ಮುರಿಯಲವನೆದೆ
ಯೊಡೆದು ದೀರ್ಘಪ್ರಜ್ಞನಿತ್ತನು ಬೇಹ ವಸ್ತುಗಳ ೪

ಆಳು ನಡೆದುದು ಚೂಣಿಯಲಿ ಗೋ
ಪಾಲನೆಂಬನ ಮುರಿಯೆ ತೆತ್ತುದ
ಹೇಳಲರಿಯೆನು ಸಂಖ್ಯೆಯನು ಮುಂದತ್ತ ಪಾಲಕನ
ಚಾಳಿಸಿದನಾ ಕಾಶಿ ರಾಜನ
ಧಾಳಿಯಲಿ ಕೊಂದನು ಸುಪಾರ್ಶ್ವನ
ಮೇಲೆ ನಡೆದನು ಗಯನ ಮತ್ಸ್ಯನ ಗೆಲಿದನಾ ಭೀಮ ೫

ನಡೆದು ಮುಂದೆ ವಿದೇಹನನು ಸದೆ
ಬಡಿದು ಮತ್ತೆ ಕಿರಾತ ಬಲವವ
ಗಡಿಸಿ ಕಾದಿತನಂತವದರೊಳಗೇಳು ಮಾನಿಸರು
ಒಡೆಯರವದಿರವಂಗಡವ ಹುಡಿ
ಹುಡಿಯ ಮಾಡಿ ನಿಷಾದ ವರ್ಗವ
ಕೆಡಹಿ ನಿಷಧನ ಹೊಯ್ದು ಸೆಳೆದನು ಸಕಲ ವಸ್ತುಗಳ ೬

ಮಲೆತು ಕಾದಿದ ದಂಡ ಧಾರನ
ಗೆಲಿದು ಮಗಧೇಶ ಗಿರಿ ವ್ರಜ
ದೊಳಗೆ ಪಾಳೆಯ ಬಿಟ್ಟುದವನಿದಿರಾಗಿ ನಡೆತಂದು
ದಳವ ಹೇಳಿದನಾತನಲ್ಲಿಂ
ದಿಳಿದು ಕರ್ಣನ ಗೆಲಿದು ಕಪ್ಪವ
ಸೆಳೆದು ಕೊಂಡದ್ರಿಯಲಿ ಸದೆದನು ಬಹಳ ವನಚರರ ೭

ಸೂರೆಗೊಂಡಲ್ಲಿಂದ ನಡೆದನು
ಮೀರಿ ಗಂಗಾಸಂಗಮವ ಕೈ
ಮೀರಲರಿಯದೆ ಸಂಧಿಗವನೀಶ್ವರರು ವಶವಾಯ್ತು
ಹೇರಿಸಿದನನುಪಮದ ವಸ್ತುವ
ನಾರು ಸಾವಿರ ಭಂಡಿಯಲಿ ನಡೆ
ದೇರಿ ಹೊಯ್ದನು ವಾಸುದೇವನ ಪೌಂಡ್ರಕಾಹ್ವಯನ ೮

ಪುರವರವನಲ್ಲಿಂದ ಮೌಲ್ಯದ
ತೆರಳಿಕೆಯ ಮಾಡಿದನು ಮೂಡಲು
ಹರಿದು ಮುರಿದು ಸಮುದ್ರಸೇನನ ಸರ್ವಗವತೆಯಲಿ
ತೆರಳಿಯಲ್ಲಿಂದಿಂದ್ರ ಸೇನನ
ನೊರೆಸಿ ಭಂಡಾರವನು ಹೇರಿಸಿ
ಮರಳಿ ವಂಗನನಪ್ಪಳಿಸಿದನು ಲುಬ್ಧಕರು ಸಹಿತ ೯

ಸಾರಲೋಹಿತನೆಂಬ ಸಾಗರ
ತೀರವಾಸಿಗಳೊಳ ಕುರುವದ ವಿ
ಕಾರ ಚೋನೆಗ ಚೀನ ಬೋಟಕರನು ನಿವಾಸಿಗಳ
ಓರೆ ಬಾಗಿನ ಕುರುವ ಕೊಳ್ಳದ
ಗೌರಿಕರನಪ್ಪಳಿಸಿ ಮಲೆಯ ವಿ
ಹಾರಿಗಳ ಬರಿಗೈದು ತುಂಬಿಸಿದನು ಸುವಸ್ತುಗಳ ೧೦

ಧಾಳಿ ಹರಿದುದು ಪಂಚ ಗೌಳವ
ರಾಳವೊಡ್ಡಿಯರಾಂಧ್ರ ಜಾಳಾಂ
ದ್ರಾಳಿಗಳನಪ್ಪಳಿಸಿ ಹೂಡಿಸಿದನು ಮಹಾಧನವ
ಮೇಲು ದುರ್ಗದ ಪಾರ್ವತೇಯರಿ
ಗಾಳು ಹರಿದುದು ಸಂದುಗೊಂದಿಯ
ಶೈಲ ಗುಹೆಗಳೊಳರಸಿ ಹಿಡಿದನು ಬಹಳ ಧನಯುತರ ೧೧

ಅರಸಿದನು ನಾವೆಗಳಲಬ್ಧಿಯ
ಕುರುವದಲಿ ಕೊಬ್ಬಿದ ಧನಾಢ್ಯರ
ಮುರಿದು ಮರಳಿದು ಕೆಲಬಲದಲಾ ದ್ವೀಪ ಪಾಲಕರ
ಸೆರೆವಿಡಿದು ತನಿ ಸೂರೆಯಲಿ ಪಡೆ
ನೆರೆ ದಣಿಯಲಾ ಮ್ಲೇಚ್ಛ ವರ್ಗವ
ತರಿದು ಶೋಧಿಸಿ ತೆಗೆದನಲ್ಲಿಯ ಸಾರ ವಸ್ತುಗಳ ೧೨

ಆ ಮಹಾ ಭೋಟಕ ಮಹಾಹ್ವಯ
ಧಾಮದಲಿ ದಸ್ಯುಗಳನತಿ ನಿ
ಸ್ಸೀಮ ಯವನ ಕರೂಷರನು ತಾಗಿದನು ವಹಿಲದಲಿ
ಹೇಮ ಮುಕ್ತಾ ರಜತ ಚಂದನ
ರಾಮಣೀಯಕ ವಸ್ತು ನಿಚಯದ
ಸೀಮೆಗಳ ನಾನರಿಯೆನಳವಡಿಸಿದನು ಕಲಿಭೀಮ ೧೩

ಮರಳೆಯನಿಲಜನಾ ಮಹಾದ್ಭುತ
ತರದ ವಸ್ತುವನಾನಲಾಪುದೆ
ಧರಣಿಯೆನೆ ಸಂದಣಿಸಿದವಸಂಖ್ಯಾತ ರಥಯೂಥ
ಅರಸುಗಳ ಸಹಿತೀ ಮಹಾಬಲ
ವೆರಸಿ ಬಂದನು ಭೀಮನಣ್ಣನ
ಚರಣಕೆರಗಿದನರ್ಜುನನ ತಕ್ಕೈಸಿದನು ನಗುತ ೧೪

ಐದನೆಯ ಸಂಧಿ

ಸೂ. ನಡೆದು ವಿವಿಧ ದ್ವೀಪ ಪತಿಗಳ
ಜಡಿದು ಕಪ್ಪವ ಕೊಂಡು ತೆಂಕಣ
ಕಡಲ ವಳಯದ ನೃಪರ ಗೆಲಿದನು ವೀರ ಸಹದೇವ

ಕೇಳು ಜನಮೇಜಯ ಧರಿತ್ರೀ
ಪಾಲ ಸಹದೇವನ ಸಗಾಢಿಕೆ
ಯಾಳುತನವಿವರಾರ ಹವಣಲ್ಲೆಂಬ ತೆರನಾಯ್ತು
ಆಳು ನಡೆದುದು ತೆಂಕಣವನೀ
ಪಾಲರೀತನ ಬಿರಿಸಿಗೀತನ
ದಾಳಿಗೀತನ ದೆಸೆಗೆ ದೆಸೆಗೆಟ್ಟುದು ದಿಗಂತದಲಿ ೧

ಶೂರ ಸೇನನ ಸದೆದು ನೆರೆ ಭಂ
ಡಾರವೆಲ್ಲವ ಕೊಂಡು ತೆಂಕಣ
ವೀರಮತ್ಸ್ಯನ ಗೆಲಿದು ಸರ್ವಸ್ವಾಪಹಾರದಲಿ
ಭೂರಿ ಬಲನಹ ದಂತವಕ್ತ್ರನ
ವಾರಣಾಶ್ವ ರಥಂಗಳನು ಕೊಂ
ಡಾರುಭಟೆಯಲಿ ಮುಂದೆ ನಡೆದನು ತೆಂಕಮುಖವಾಗಿ ೨

ಖಳ ನಿಶಾಚರ ಕೋಟಿಗಳನರೆ
ಗಳಿಗೆಯೊಳಗಾಕ್ರಮಿಸಿದನು ಮುಂ
ಡಳಿಕ ಮನ್ನೆಯರಾಂಪರೇ ಚತುರಂಗ ಪದಹತಿಗೆ
ಹೊಳೆತಡಿಯ ಗಿರಿ ದುರ್ಗ ವಿಪಿನ
ಸ್ಥಳದ ಧರಣಿಪರಿದಿರುವಂದ
ಗ್ಗಳಿಯು ಗಜ ರಥ ಹಯ ಸಹಿತ ತೆತ್ತರು ಸುವಸ್ತುಗಳ ೩

ಬಂದು ಕುಂತೀಭೋಜ ಮೊಮ್ಮನ
ಮುಂದಿರದ ಸುಕ್ಷೇಮ ಕುಶಲವ
ನಂದು ಕೇಳಿದು ಕೊಟ್ಟನತಿಶಯ ಸಾರವಸ್ತುಗಳ
ಮುಂದೆ ಚರ್ಮಣ್ವತಿಯ ಜಂಭಕ
ನಂದನನನಪ್ಪಳಿಸಿ ಗಜ ಹಯ
ವೃಂದವನು ಕೊಂಡೆತ್ತಿ ಬಿಟ್ಟನವಂತಿ ದೇಶದಲಿ ೪

ತರುಬಿದರೆ ವಿಂದಾನುವಿಂದರ
ಮುರಿದು ಕಪ್ಪವ ಕೊಂಡು ಭೀಷ್ಮಕ
ನರಪತಿಯ ಗೆಲಿದಲ್ಲಿ ಮನ್ನಿಸಿಕೊಂಡನುಚಿತದಲಿ
ಬರಬರಲು ಕುಂತಲ ನೃಪನನಾ
ಕರಿಸಿ ಕಪ್ಪವ ಕೊಂಡು ಖಳ ತಿ
ತ್ತಿರಿ ಕಿಳೀಂದ್ರಕರೆಂಬ ಬೇಡರ ಧುರದೊಳೋಡಿಸಿದ ೫

ಉರವಣಿಸಿ ದಳ ತುಂಗಭದ್ರಾ
ವರ ನದಿಯನುತ್ತರಿಸಿ ಪಂಪಾ
ಸರದ ತಡಿಯಲಿ ಬಿಟ್ಟನಾ ವಿರುಪಾಕ್ಷ ಸೀಮೆಯಲಿ
ಗಿರಿಚರರ ವನಚರರ ಬಿಂಕವ
ನೊರಸಿ ಕಿಷ್ಕಿಂಧಾದ್ರಿಯಲಿ ಸಂ
ಚರಿಸಿ ಬಿಟ್ಟನು ಕಟಕ ಬಹುವಿಧ ವಾದ್ಯ ರಭಸದಲಿ ೬

ಕೇಳಿದನು ಕಿಷ್ಕಿಂಧ ಗಿರಿಯ ವಿ
ಶಾಲ ಶೃಂಗವನು ನೆರೆ ಘನ ನಿ
ಸ್ಸಾಳ ಮೊಳಗಿದರೊಡನೆ ಮೊಳಗಿತು ಗಿರಿ ಗುಹಾನಿಕರ
ಆಳಿದೆತ್ತಣದೆನುತ ಕಪಿ ಬಲ
ಜಾಲ ನೆರೆದುದು ಮುರಿದು ತರು ಶಾ
ಖಾಳಿಗಳ ಕೈದುಗಳ ಕೈಯಲಿ ತರುಬಿದರು ಬಲವ ೭

ಕವಿದುದೀ ಚತುರಂಗ ಬಲ ಸಂ
ತವಿಸಿ ಲಗ್ಗೆಯ ಮಾಡಿ ವಾನರ
ನಿವಹದಲಿ ಕರೆದುದು ಶರಾಳಿಯ ಸಂಭಟ ಮೇಘಚಯ
ತಿವಿದರಂಬಿನ ಸೋನೆಗಳುಕದೆ
ಸವಡಿ ಮರನಲಿ ಸದೆದು ಹೊಕ್ಕುದು
ರವಿಸುತನ ಸಂತತಿ ಸುಷೇಣನು ವೀರ ವೃಷಸೇನ ೮

ದೊರೆಗೆ ದೊರೆಯೆದಿರಾಗಿ ಕಾದಿತಂ
ತೆರಳದಿದು ದಿನವೇಳು ಪರಿಯಂ
ತರ ವಿಘಾತಿಯೊಳೊದಗೆ ಮೆಚ್ಚಿದರುಭಯ ವಾನರರು
ಅರಸ ನೀನಾರೆನೆ ಯುಧಿಷ್ಠಿರ
ನರಪತಿಯ ಕಥೆವೇಳೆ ಕೊಟ್ಟರು
ಪರಮ ವಸ್ತು ಪ್ರಚಯವನು ಮಾದ್ರೀಕುಮಾರಂಗೆ ೯

ತೆರಳುತಲ್ಲಿಂ ಬಳಿಕ ತೆಂಕಣ
ನರಪತಿಗಳಾನುವರೆ ಸೇನೆಯ
ಖುರಪುಟಕೆ ನುಗ್ಗಾಗಿ ತೆತ್ತರು ಸಕಲ ವಸ್ತುಗಳ
ಉರವಣಿಸಿ ಬಲ ನಡೆದು ನದಿಗಳ
ನರಸಿ ಕಾವೇರಿಯಲಿ ಬಿಟ್ಟುದು
ಹರಿದುದಲ್ಲಿಂ ಧಾಳಿ ಘನ ಮಾಹಿಷ್ಮತೀಪುರಕೆ ೧೦

ಧಾಳಿಯೆನಲಿದಿರಾಗಿ ಹೊರವಂ
ಟಾಳು ತಾಗಿದುದಲ್ಲಿಗಧಿಪತಿ
ನೀಲನೆಂಬಾತನು ಮಹಾಹವವಾಯ್ತು ಚೂಣಿಯಲಿ
ಹೇಳಲದ್ಭುತವುರಿದುದಧಿಕ
ಜ್ವಾಲೆಯಲಿ ಚತುರಂಗ ಬಲ ಹರ
ಭಾಳನಯನ ಕವಾಟ ತೆರೆದಂತಾಯ್ತು ನಿಮಿಷದಲಿ ೧೧

ಉರಿ ಸಮುದ್ರದೊಳದ್ದುದೋ ಮೋ
ಹರವು ತೆಗೆ ತೆಗೆ ಕುನ್ನಿಗಳ ಕಾ
ತರಿಸಲೀಯದಿರಾನೆ ಮುರಿಯಲಿ ಹೊಕ್ಕ ಕುದುರೆಗಳು
ಮರಳಿಚಲಿ ತೇರುಗಳ ಸೂತರ
ಕರೆದು ವಾಘೆಯ ಸೆಳೆ ಪದಾತಿಯ
ತಿರುಗ ಹೊಯ್ ಹೊಯ್ಯೆನುತ ಮಿಗೆ ಗಜರಿದನು ಸಹದೇವ ೧೨

ರಾಯದಳವೇಕುರಿದುದೇನಿದ
ರಾಯಸವು ಹೊಸತಾಯ್ತು ವೈಶಂ
ಪಾಯ ಮುನಿ ಹೇಳೆನಲು ನಗುತಿಂತೆಂದನಾ ಮುನಿಪ
ರಾಯ ಕೇಳ್ಳೆ ಪೂರ್ವದಲಿ ಕಮ
ಲಾಯತಾಕ್ಷಿಯರುಂಟು ಪಲಬರು
ವಾಯುಸಖ ಪರದಾರ ಗಮನವ ಮೆಚ್ಚಿದನು ಬಳಿಕ ೧೩

ಪಾವಕ ದ್ವಿಜ ವೇಷದಲಿ ಬಂ
ದಾ ವಧುಗಳೊಡನಿರಲು ನಗರವ
ಕಾವವರು ಹಾದರವ ಹಿಡಿದರು ಹವ್ಯವಾಹನನ
ಕೋವಿದರ ಮುಂದಿಕ್ಕಿದರೆ ಧ
ರ್ಮಾವಲಂಬನ ಶಾಸ್ತ್ರಗಳನು
ದ್ಭಾವಿಸಲು ಭುಗಿಲೆಂದು ತೋರಿದನಗ್ನಿ ನಿಜ ತನುವ ೧೪

ಧರಣಿಸುರರಲಿ ಸುಪ್ರಧಾನರು
ವೆರಸಿ ಬಂದಗ್ನಿಯ ಪದ ತ್ರಯ
ಕೆರಗಿ ಕೋಪಸ್ತಂಭವನು ಮಾಡಿದರು ದೈನ್ಯದಲಿ
ಪುರದಲದು ಮೊದಲಾಗಿ ಕಾಮಿನಿ
ಯರಿಗೆ ಹಾದರ ಸಲುವುದಿದು ವಿ
ಸ್ತರಣವೆಂದು ಕೃಶಾನು ವರವನು ಕೊಟ್ಟನಾ ನೃಪಗೆ ೧೫

ಅದುವೆ ಮೊದಲಾಗೀಗಳಲ್ಲಿಯ
ಸುದತಿಯರು ಸ್ವಚ್ಛಂದ ಚಾರಿಯ
ರಿದರಿನಾ ನೃಪತಿಗೆ ಸಹಾಯವನಗ್ನಿ ಮಾಡುವನು
ಇದನರಿತು ಸಹದೇವನುಪವಾ
ಸದಲಿ ಮಿಂದು ಕುಶಾಗ್ರ ಸಂಸ್ತರ
ಣದಲಿ ಪವಡಿಸಿ ಬೇಡಿಕೊಂಡನು ವಹ್ನಿಸೂಕ್ತದಲಿ ೧೬

ಯಾಗವಿದು ನಿನಗೋಸುಗವೆ ನೃಪ
ಯಾಗ ಸಿದ್ಧಿಗೆ ಬಂದೆವಲ್ಲದೆ
ಮೇಗೆ ತಾನರಿಯದೆ ಧನಾಶೆಯಲಿವನ ಮುರಿಯವಲೆ
ಈಗ ನೀನಡ್ಡೈಸಲೆಮ್ಮಯ
ಯಾಗವುಳಿಯಲಿ ನಿನಗೆ ಮಾಣಲಿ
ಯಾಗ ಪೌರೋಹಿತ್ಯವೆಂದನು ನಗುತ ಸಹದೇವ ೧೭

ಎಂದು ನಾನಾವಿಧ ವರ ಸ್ತುತಿ
ಯಿಂದ ಹೊಗಳಿದರಗ್ನಿ ಮೆಚ್ಚಿದ
ರಿಂದು ಬಿಡಿಯೆನೆ ಬಿಟ್ಟೆನೀತನ ಮಾರಿದೆನು ನಿನಗೆ
ಎಂದು ಶಿಖಿ ಹಿಮ್ಮೆಟ್ಟಲಾ ದಳ
ಮುಂದೆ ನಡೆದುದು ನೀಲ ಪುರದಲಿ
ಸಂದಣಿಸಿ ಬಳಿಕಾತನೀತನ ಕಂಡು ಪೊಡವಂಟ ೧೮

ತೆತ್ತನವ ಸರ್ವಸ್ವವನು ತಾ
ನೆತ್ತಿ ಬಂದನು ಕೂಡೆ ಬಳಿಕಿನೊ
ಳುತ್ತರೋತ್ತರವಾಯ್ತು ಸಹದೇವನಿಗೆ ದಿಗ್ವಿಜಯ
ಮತ್ತೆ ಸಹ್ಯಾಚಲದ ಕೊಳ್ಳದ
ಗುತ್ತರಿನ ಭೂಪರ ವಿಭಾಡಿಸಿ
ಸುತ್ತಿ ಬಂದಾದರಿಸಿದನು ತದ್ಗಿರಿ ನಿವಾಸಿಗಳ ೧೯

ಇಳಿದು ಕೊಂಕಣ ಗೌಳವರ ಕೇ
ರಳರ ಸದೆದು ಮಹಾರ್ಘ ರತ್ನಾ
ವಳಿಯ ಹೇರಿಸಿದನು ಸುಚಿತ್ರಾಂಬರ ವಿಲೇಪನವ
ಜಲಧಿಯಂತರ್ದ್ವೀಪ ಪತಿಗಳ
ಕುಲವ ಶೋಧಿಸಿ ಚೋಳ ಪಾಂಡ್ಯರ
ದಳವ ಧಟ್ಟಿಸಿ ಕೊಂಡನನುಪಮ ಸಾರವಸ್ತುಗಳ ೨೦

ಕಳುಹಿದನು ಮಿಗೆಯಾಪ್ತ ಪತ್ರಾ
ವಳಿಯ ತನುಜನ ಬಳಿಗೆ ತತ್‌ಕ್ಷಣ
ದೊಳಗೆ ಹೇಳಿಕೆಯಾಯ್ತು ಪರಿವಾರಕೆ ಘಟೋತ್ಕಚನ
ತಿಳಿದ ಕಾರಿರುಳೆರಕವೋ ಮೇಣ್
ಖಳ ಜನದ ಹೃದಯಾಂಧಕಾರದ
ಹೊಳಕೆಯೋ ತಾನೆನುತಿರಲು ನಡೆತಂದನಾ ದನುಜ ೨೧

ಪಾಳೆಯವ ಹೊಕ್ಕನು ಘಟೋತ್ಕಚ
ನಾಳು ಸಹಿತಯ್ಯಂಗೆ ನಮಿಸಿದ
ನೂಳಿಗವ ಹೇಳೆನಗೆ ಬೆಸಸಾ ರಾಜಕಾರಿಯುವ
ವೀಳೆಯವ ತಾಯೆನಲು ನಗುತ ವಿ
ಶಾಲ ವಿನಯಕೆ ಮೆಚ್ಚಿದನು ಬಲು
ದೋಳಿನಲಿ ಸೆಳೆದಪ್ಪಿ ಮುಂಡಾಡಿದನು ನಂದನನ ೨೨

ಮಗನೆ ಲಂಕೆಗೆ ಪೋಗು ಮಾನವ
ರಿಗೆ ಮಹೋದಧಿ ಗಮ್ಯವಲ್ಲತಿ
ವಿಗಡತನ ಬೇಡಲ್ಲಿ ವಿನಯದೆಲೆನ್ನು ಕಾರಿಯವ
ಸೊಗಸಿತೇ ಸಾಮದಲಿ ಕಪ್ಪವ
ತೆಗೆವುದವಗಡಿಸಿದರೆ ಬಳಿಕ
ಲ್ಲಿಗೆ ಶರಾಳಿಗಳಿವೆ ವಿಘಾತಿಗೆ ದೋಷವಿಲ್ಲೆಂದ ೨೩

ಎನೆ ಹಸಾದವ ಹಾಯ್ಕಿ ಭೀಮನ
ತನಯ ಕಳುಹಿಸಿಕೊಂಡು ತೆಂಕಲು
ಮನದಿ ಮುನ್ನವೆ ಬಂದ ರಾಮೇಶ್ವರದ ಶಿವ ಗೃಹಕೆ
ವಿನಯ ಮಿಗೆ ಪೊಡವಂಟು ರಘು ನಂ
ದನನ ಕೀರ್ತಿಸ್ತಂಭಡಂಬರ
ವೆನಿಪ ಸೇತುವ ಕಂಡು ನಡೆದನು ತೆಂಕ ಮುಖವಾಗಿ ೨೪

ತೋರಿತತಿ ದೂರದಲಿ ಲಂಕೆಯ
ಮೂರು ಶಿಖರದ ದುರ್ಗವುದಧಿಗೆ
ಮಾರುದಧಿಯೆನೆ ಮೆರೆದುದಂದು ಮಣಿಪ್ರಭಾವದಲಿ
ನೂರು ಯೋಜನ ಸೇತು ಮೂಲವ
ಮೀರಿ ನಡೆದನು ಬಡಗವಾಗಿಲ
ಕೇರಿದಗಳಿನ ಪಡಿಪೊಗವ ದಾಟಿದನು ವಹಿಲದಲಿ ೨೫

ಕೇರಿ ಕೇರಿಗಳೊಳಗೆ ನಿಜ ಪರಿ
ವಾರ ಸಹಿತ ವೃಕೋದರಾತ್ಮಜ
ನಾರಿವನು ತಾನಾರೆನಲು ನಡತಂದನೊಲವಿನಲಿ
ವೀರ ದಾನವ ವರ್ಗದಲಿ ಬಹ
ತೋರಹತ್ತನ ಕಂಡಪೂರ್ವ ವಿ
ಕಾರಿ ಮಾನಿಸನಲ್ಲೆನುತ ಮುತ್ತಿದುದು ಪೌರಜನ ೨೬

ಬಂದನರಮನೆಗಾಗಿ ಬಾಗಿಲ
ಮುಂದಣೆಡ ಬಲ ಹೇಮ ವೇದಿಯ
ಸಂದಣಿಯ ಜನ ನೋಡಲೆಂದನು ದೋರಪಾಲರಿಗೆ
ಇಂದು ನಾವುತ್ತರದ ಭೂಮಿಪ
ರಿಂದ ಬಂದೆವು ಪೇಳು ನಿಜ ಪತಿ
ಗೆಂದಡವ ಬಂದನು ವಿಭೀಷಣ ದೇವನೋಲಗಕೆ ೨೭

ಜೀಯ ಬಿನ್ನಹ ಬಂದನುತ್ತರ
ರಾಯನಟ್ಟಿದ ದೂತನೆನೆ ತ
ಪ್ಪಾಯಿತೇ ಹೊಗಿಸೆನಲು ಕರೆದನು ಕಲಿ ಘಟೋತ್ಕಚನ
ವಾಯು ತನುಜನ ಸುತನು ತನ್ನ ಪ
ಸಾಯತರು ಸಹಿತೊಳಗೆ ಹೊಕ್ಕು ನ
ವಾಯೆಯಲಿ ನಡೆತಂದು ಕಾಣಿಕೆ ಕೊಟ್ಟು ಪೊಡವಂಟ ೨೮

ಬಿಗಿದ ಮರಕತ ಮಣಿಯ ನೆಲಗ
ಟ್ಟುಗಳ ಹವಳದ ಹಲಗೆಗಳ ಮಾ
ಳಿಗೆಯ ವೈಡೂರ್ಯದ ಕವಾಟದ ವಜ್ರಭಿತ್ತಿಗಳ
ಹೊಗರಿಡುವ ಹರಿ ನೀಲಮಣಿ ವೇ
ದಿಗಳ ಮುತ್ತಿನ ಲಂಬಳದ ಲೋ
ವೆಗಳ ಕಾಂತಿಯ ಲಳಿಯ ಲಹರಿಯೊಳಿದ್ದನಮರಾರಿ ೨೯

ಇತ್ತ ಬಾರೈ ಕುಳ್ಳಿರೆತ್ತಣ
ದೆತ್ತ ಬರವಾರಟ್ಟಿದರು ನೀ
ವೆತ್ತಣವರೇನೆಂದು ನಿಮ್ಮಭಿಧಾನವೇನಹುದು
ಬಿತ್ತರಿಸಿ ಹೇಳೆನಲು ಕೈಮುಗಿ
ವುತ್ತ ನುಡಿದನು ರಾವಣಾನುಜ
ಚಿತ್ತವಿಪುದೆಮ್ಮಖಿಳ ಪೂರ್ವೋತ್ತರದ ಸಂಗತಿಯ ೩೦

ಸೋಮ ವಂಶದಲರಸುಗಳು ನಿ
ಸ್ಸೀಮರಿದ್ದರು ಪಲಬರದರೊಳು
ಭೂಮಿಗಧಿಪತಿ ಪಾಂಡುವಾತಂಗೈವರಾತ್ಮಜರು
ಆ ಮಹೀಪತಿ ಧರ್ಮನಂದನ
ಭೀಮ ಫಲುಗುಣ ನಕುಲನಲ್ಲಿ ಸ
ನಾಮ ಸಹದೇವಾಖ್ಯನಿನಿಬರು ಚಿತ್ತವಿಸಿಯೆಂದ ೩೧

ಅರಸನೆಂದರೆ ಸಕಲ ಧರ್ಮಕೆ
ಕರ ಚರಣವಾದಂತೆಯಾತನ
ಕಿರಿಯರಿಹರು ಚತುರ್ವಿಧೋಪಾಯ ಸ್ವರೂಪದಲಿ
ಸುರಮುನಿಯ ಮತದಿಂದ ಯಾಗೋ
ತ್ಕರುಷಕಾದುದು ಬುದ್ಧಿ ಜನಪಾ
ಧ್ವರವ ದಿಗ್ವಿಜಯಾಭಿಸಂಧಿಗೆ ಮಾಡಿದನು ಮನವ ೩೨

ಬಡಗಲರ್ಜುನನುತ್ತರಾಬ್ಧಿಯ
ತಡಿಯ ನೆಲ ಪರಿಯಂತ ವಸ್ತುವ
ಜಡಿದು ತಂದನು ಮೂಡಲಾವರಿಸಿದನು ಕಲಿ ಭೀಮ
ಪಡುವಲರ್ಜುನನನುಜ ತೆಂಕಣ
ಕಡೆಗೆ ಸಹದೇವಾಖ್ಯನೀ ಪರಿ
ನಡೆವುತಿದ್ದುದು ತಾ ಘಟೋತ್ಕಚ ಭೀಮಸುತನೆಂದ ೩೩

ಅರಸನೊಂದು ನಿಮಿತ್ತ ದೇಶಾಂ
ತರ ಪರಿಭ್ರಮಣದಲಿ ವಿಪಿನಾಂ
ತರದೊಳಿರೆ ಬಂದನು ಹಿಡಿಂಬಕನೆಂಬನಸುರಪತಿ
ಕೆರಳಿಚಿದೊಡಾ ಭೀಮನಾತನ
ನೊರಸಿದನು ಖಳನನುಜೆಯಾತಂ
ಗರಸಿಯಾದಳು ಸತಿ ಹಿಡಿಂಬಿಕೆ ಮಾತೆ ತನಗೆಂದ ೩೪

ಇನಿಬರಿಗೆ ಪತಿ ದೇವಕೀ ನಂ
ದನನಘಾಸುರ ಮಥನ ಮಧು ಸೂ
ದನ ಮುರಾಂತಕ ದೈತ್ಯ ಮರ್ದನ ಭಕ್ತಸುರಧೇನು
ಮುನಿಹೃದಯ ಪರ್ಯಂಕ ಕರುಣಾಂ
ಬುನಿಧಿ ರಾವಣ ಕಂಠ ಕಾನನ
ಘನ ಪರಶುವೀ ಕೃಷ್ಣನೈವರ ಜೀವಸಖನೆಂದ ೩೫

ಕ್ರತುವಿದಸುರಾರಾತಿಗೀ ಕ್ರತು
ಪತಿ ಯುಧಿಷ್ಠಿರ ದೂತ ನಾನಿದ
ರತಿಶಯವ ನೀ ಬಲ್ಲೆಯೆನೆ ನೋಡಿದನು ತನ್ನವರ
ಇತರ ವಿಧದಿಂದಧಿಕ ಪುಣ್ಯ
ಪ್ರತತಿಯಂಟೇ ರಾಮಚಂದ್ರನ
ವಿತತ ಕೀರ್ತಿ ತ್ರೇತೆಯೀ ದ್ವಾಪರದಲಾಯ್ತೆಂದ ೩೬

ತಾವು ಮರ್ತ್ಯರು ಪೂರ್ವಯುಗದವ
ರಾವು ತಮ್ಮಂತರವ ನೋಡದೆ
ದೇವರೆದೆದಲ್ಲಣದ ಲಂಕೆಯ ತಾವನೀಕ್ಷಿಸದೆ
ಆವುದುಚಿತಾನುಚಿತವೆಂಬುದ
ಭಾವಿಸದ ಗರ್ವಿತರ ನೋಡಿ
ನ್ನಾವ ಸದರವೊ ನಾವೆನುತ ಗರ್ಜಿಸಿತು ಖಳನಿಕರ ೩೭

ನೊಸಲಿನಲಿ ಕಣ್ಣುಳ್ಳ ದೇವನು
ಹೊಸೆದು ಲಂಕಾದ್ವೀಪ ಸೀಮೆಂಗೆ
ಮಿಸುಕಲಮ್ಮನು ಬಂದು ಕಂಡವರಿಲ್ಲ ಪಟ್ಟಣವ
ಬಿಸಜಸಂಭವನಾದಿ ದೇವ
ಪ್ರಸರ ಮಿಗೆ ನಡುಗುತ್ತಲಿಪ್ಪುದು
ನುಸಿಗಳಹ ಮಾನವರ ಪಾಡೇನೆನುತ ಗರ್ಜಿಸಿತು ೩೮

ಕಾಳಗದೊಳಿಂದೆಮಗೆ ವಿದಿಜೇಂ
ದ್ರಾಳಿಯಲಿ ಸಮಭಟರ ಕಾಣೆವು
ಮೇಳವೇ ಮರುಳು ಪೂತು ಮರ್ತ್ಯರ ಸಹಸವೆಮ್ಮೊಡನೆ
ತೋಳನಳವಿಗೆ ಮಲೆತ ಕುರಿಗಳ
ಜಾಲದಂತಿಹುದೆಂದು ಮಂದಕ
ರಾಳಮತಿಗಳ್ಳು ನಗಲು ಕಂಡನು ಕಲಿ ಘಟೋತ್ಕಚನು ೩೯

ನಾಲಗೆಯ ನೆಣಗೊಬ್ಬುಗಳಲಿ ಛ
ಡಾಲಿಸಿದರೇನಹುದು ಸಭೆಯಲಿ
ಕಾಳಗದೊಳಿದಿರಾರು ಭೀಮಾರ್ಜುನರ ಭಾರಣೆಗೆ
ಆಳುತನವಂತಿರಲಿ ವೈಷ್ಣವ
ಮೌಳಿ ಬೆಸಸಲಿ ಕೇಳ್ವೆನೆನೆ ಕ
ಟ್ವಾಳುಗಳ ದೇವನು ವಿಭೀಷಣ ನಗುತಲಿಂತೆಂದ ೪೦

ಕಾಲವಾವುದು ತನ್ನ ಶಕ್ತಿಯ
ಕೀಲು ಮೇಲಾವುದು ಸಹಾಯದ
ಮೇಲು ಸೆರಗೇನೆಂದು ನೋಡದೆ ಬಯಲ ಗರ್ವದಲಿ
ಸೋಲುವುದು ಜಗವಿಹಪರದ ಗತಿ
ಕಾಳಹುದು ಖಳರರಿಯರದನು
ಬ್ಬೇಳುವರು ಬರಿದೆಂದು ಜರೆದನು ತನ್ನ ಮಂತ್ರಿಗಳ ೪೧

ಅದರಿನೀ ದ್ವಾಪರದಲೀ ಹರಿ
ಯುದಯಿಸಿದನಾ ಕಾಲದಲಿ ಸಲ
ಹಿದನು ನಮ್ಮನು ಹಿಡಿದನಿವರನು ವರ್ತಮಾನದಲಿ
ಪದದ ದರ್ಪದಲಂಬುಜಾಕ್ಷನ
ಪದವ ಮರೆದರೆ ಪಾತಕದ ದು
ರ್ಗದಲಿ ಕೆಡಹನೆ ನಮ್ಮನೆಂದು ವಿಭೀಷಣನು ನುಡಿದ ೪೨

ತರಿಸಿದನು ಭಂಡಾರದಲಿ ಪರಿ
ಪರಿಯ ಪೆಟ್ಟಿಗೆಗಳನು ಕಂಠಾ
ಭರಣ ಕಂಕಣ ವಜ್ರ ಮಾಣಿಕ ಮರಕತಾವಳಿಯ
ಚರಣ ನೂಪುರ ಝುಳವಟಿಗೆಯುಂ
ಗುರ ಕಿರೀಟಾಂಗದ ಸುಕರ್ಣಾ
ಭರಣವನು ತೆಗೆಸಿದನು ಭೀಮಕುಮಾರ ನೋಡೆನುತ ೪೩

ನೀಲಮಣಿ ಕಾಂತಿಗಳ ಹೊಯ್ಲಲಿ
ಕಾಳ ರಜನಿಯೊಲಾಯ್ತು ಮುತ್ತಿನ
ಥಾಳ ಧವಳಿಸಲಾಯ್ತು ಚಂದ್ರಿಕೆ ತನುವ ಡೊಕ್ಕರಿಸಿ
ಮೇಲೆ ಹೊಂಬಿಸಿಲಾಯ್ತು ಮಾಣಿಕ
ದೇಳಿಗೆಯ ಲಹರಿಯಲಿ ವರ ರ
ತ್ನಾಳಿ ರುಚಿಯಲಿ ಚಂಡಿಯಾಯಿತು ದಿವಸವಂದಿನಲಿ ೪೪

ತೆಗೆಸಿದನು ಗಜದಂತಮಯ ಪೆ
ಟ್ಟಿಗೆಗಳನು ಕರ್ಪುರದ ತವಲಾ
ಯಿಗಳ ಹವಳದ ಮಂಚವನು ಮಣಿಖಚಿತ ರಚನೆಗಳ
ಬಿಗಿದ ವಜ್ರಪ್ರಭೆಯ ಹೊನ್ನಾ
ಯುಗದ ಖಡ್ಗ ಕಠಾರಿಗಳ ಝುಗ
ಝುಗಿಪ ಹೊಂಗೆಲಸದ ವಿಚಿತ್ರದ ಜೋಡು ಸೀಸಕವ ೪೫

ಗುಳವ ರೆಂಚೆಯ ಹಕ್ಕರಿಕೆ ಹ
ಲ್ಲಳವ ಮಣಿ ಕಾಂಚನಮಯಂಗಳ
ಕೆಲಸ ಗತಿಗಳ ಹೇಮರೇಖೆಯ ವಿವಿಧ ಚಿತ್ರಗಳ
ಬಿಳಿಯ ಚೌರಿಯ ಹೊರೆಗಳಂರು ಹ
ತ್ತಳದ ಕಟ್ಟಿಗೆ ಬೇಂಟೆಗಳ ಹದ
ವಿಲು ತದೀಯ ಶರಾಳಿಗಳ ತಂದಿಳುಹಿದರು ಚರರು ೪೬

ಬಲಮುರಿಯ ಶಂಖಗಳ ಗಂಧದ
ಬಲು ಹೊರೆಯ ಕೃಷ್ಣಾಗರುವಿನೊ
ಟ್ಟಿಲ ಸುರಂಗಿನ ಪಟ್ಟೆಪಟ್ಟಾವಳಿಯ ದಿಂಡುಗಳ
ಪುಲಿದೊಗಲ ಕೃಷ್ಣಾಜಿನಂಗಳ
ಹೊಳೆವ ಹೊಂಗೊಪ್ಪರಿಗೆ ಚಿತ್ರಾ
ವಳಿಯ ಸತ್ತಿಗೆ ಹೇಮಘಟ ಸಂತತಿಯನೊಟ್ಟಿದರು ೪೭

ಕೀಳಿಸಿದನರಮನೆಯ ಹೇಮದ
ತಾಳ ಮರ ಹದಿನಾಲ್ಕನಧ್ವರ
ಶಾಲೆಯಿದಿರಲಿ ತೋರಣ ಸ್ತಂಭಂಗಳಹವೆಂದು
ಮೇಲೆ ರಾಕ್ಷಸ ಟಂಕದಚ್ಚಿನ
ಜಾಳಿಗೆಗಳನು ತಲಿಸಿ ಕಟ್ಟಿಸಿ
ಮೇಲು ಮುದ್ರೆಗಳಿಕ್ಕಿದವು ಕರೆಸಿದನು ಹೊರೆಯುವರ ೪೮

ಕುಲಗಿರಿಯನೊಡೆ ಮೀಟಿ ತಮ್ಮಯ
ತಲೆಯೊಳಾನುವ ಕರ್ಕಶಾಂಗದ
ಕಲುದಲೆಯ ಹೇರೊಡಲ ಮಿಡುಕಿನ ಕಾಳ ರಕ್ಕಸರು
ಸೆಳೆದು ಹೊತ್ತರು ಹೊರೆಯನಿವರಿ
ಟ್ಟಳಿಸಿ ಹೊರವಂಟರು ವಿಭೀಷಣ
ಕಳುಹಿದನು ಪವಮಾನ ಸುತ ನಂದನನ ಸತ್ಕರಿಸಿ ೪೯

ದನುಜನಬ್ಧಿಯ ದಾಟಿ ಸಹದೇ
ವನ ಸಮೀಪಕೆ ಬಂದು ರಾವಣ
ನನುಜ ಮಾಡಿದ ಬಹಳ ಸತ್ಕಾರವನು ಬಿನ್ನವಿಸಿ
ಆನಿಬರನು ಕಾಣಿಸಿದನಾ ಕಾಂ
ಚನಮಯದ ಹೊರೆ ಲಕ್ಕ ಸಂಖ್ಯೆಗ
ಳನುಪಮಿತ ರಕ್ಕಸರ ಕಂಡಂಜಿದುದು ನೃಪಕಟಕ ೫೦

ಲಾಲಿಸಿದನಾ ಖಳರನೆತ್ತಿತು
ಪಾಳೆಯವು ನಡೆತಂದು ಪಯಣದ
ಮೇಲೆ ಪಯಣವನೈದಿ ಬಂದನು ತಮ್ಮ ಪಟ್ಟಣಕೆ
ಮೇಲೊಗುವ ಸುಮ್ಮಾನ ಸಿರಿಯು ಚ
ಥಾಳದಲಿ ತಂದಖಿಳ ವಸ್ತುವ
ನಾಲಯದೊಳೊಪ್ಪಿಸಿದನವನೀಪತಿಗೆ ಸಹದೇವ ೫೧

ಆರನೆಯ ಸಂಧಿ

ಸೂ. ನಕುಲ ಪಶ್ಚಿಮ ದೆಸೆಯ ಭೂಪಾ
ಲಕರ ಗೆಲಿದನು ನೆರೆದ ರತ್ನ
ಪ್ರಕರದಿಂದಳಕಾಪುರಿಗೆ ಮಿಗಿಲಾಯ್ತು ನೃಪನಗರ

ಕೇಳು ಜನಮೇಜಯ ಧರಿತ್ರೀ
ಪಾಲ ಪಶ್ಚಿಮ ದೆಸೆಯ ಭೂಮೀ
ಪಾಲಕರ ಮೇಲೆತ್ತಿ ನಡೆದನು ನಕುಲನೊಲವಿನಲಿ
ಧಾಳಿ ಹರಿದುದು ಮರು ಯವನ ನೇ
ಪಾಳ ರೋಹಿತರೆಂದೆನಿಪ ಭೂ
ಪಾಲಕರ ಮುರಿದವರ ಸಪ್ತಾಂಗವ ವಿಭಾಡಿಸಿದ ೧

ಹೇಮಕನ ಸೈರಿಭಕನೆಂಬ ಸ
ನಾಮರನು ಮುರಿದನು ಕಳಿಂಗದ
ಭೂಮಿಪರ ಸದೆದನು ತ್ರಿಗರ್ತರ ಶಿಬಿಯ ಸಂತತಿಯ
ಹೇಮ ಮಾತ್ರವನುಳುಹದವದಿರ
ಭೂಮಿಗಳನವರ್ಗಿತ್ತು ವಸ್ತು
ಸ್ತೋಮವನು ನೆರಹಿದನು ನಡೆದನು ಮುಂದೆ ಪಶ್ಚಿಮಕೆ ೨

ಮುರಿದನಗ್ಗದ ಚೇಕಿತಾನರ
ನೆರಗಿದನು ಬರ್ಬರ ತುರುಷ್ಕರ
ನೊರಗಿಸಿದನಾಹವದೊಳಾಭೀರಕರ ಬಾಹ್ಲಿಕರ
ಸೆರೆಯ ಹಿಡಿದನು ಪಾರ್ವತೇಯರ
ನುರುಕುಗೊಳಿಸಿದ ಜೀನರಂಬ
ಷ್ಠರನು ಸಿಂಧು ಸರಸ್ವತೀ ತೀರದ ಮಹೀಶ್ವರರ ೩

ರಣದ ಸಂಕೇತಗಳೊಳುತ್ಸವ
ರಣಸಮರ್ಥರ ಹಿಂಡಿದನು ಚಾ
ರಣರ ಖುರಸಾಣರನು ಪುಷ್ಕರ ವರ ನಿವಾಸಿಗಳ
ಹಣೆದಲ್ಲಿಂದಿತ್ತ ಮಿಗೆ ಪಡು
ವಣ ದಿಗಂತದಲದಟರಸ ಪ
ಪ್ಪಣದವರ ಪಂಚನದ ಭೂಮಿಯ ಭೂಮಿಪರ ಗೆಲಿದ ೪

ಜ್ಯೋತಿಕರ ವಣ್ಣಕಟಕರ ಕೃತ
ಯಾತಿಕರ ಯೌಧೇಯ ಸಂವೀ
ರಾತಿಶಯ ಬಡಹಾರರಮಳ ದ್ವಾರಪಾಲಕರ
ಘಾತಿಸಿದನವರುಗಳ ವಿತ್ತ
ವ್ರಾತವನು ಹೇರಿಸಿದನೆಡ ಬಲ
ದಾತಗಳನಪ್ಪಳಿಸಿ ತೆಗೆದನು ಸಕಲ ವಸ್ತುಗಳ ೫

ಮಾವನಲ್ಲಿಗೆ ಬಂದಡಾ ಮಾ
ದ್ರಾವನೀಪತಿ ಶಲ್ಯ ಮಿಗೆ ಸಂ
ಭಾವಿಸಿದನೊಲಿದಿತ್ತನೀತಂಗಖಿಳ ವಸ್ತುಗಳ
ತೀವಿದರು ಭಂಡಿಯಲಿ ಮುಂದಣ
ಜಾವಟೆಯ ಚಪಳರಿಗೆ ಹರಿಯೆ ನೃ
ಪಾವಳಿಗಳಲ್ಲಲ್ಲಿ ತೆತ್ತರು ಕಂಡ ವಸ್ತುಗಳ ೬

ತಳಿತು ಬಿಟ್ಟುದು ಸೇನೆ ಪಡುವಣ
ಜಲಧಿಯ ಕರಾವಳಿಗಳಲಿ ಕೇ
ವಳಿಸಿದರು ಕೊಲ್ಲಣಿಗೆಯಲಿ ಕೊಂಡರು ಸುವಸ್ತುಗಳ
ಕಳಿವರಿದು ಹಿಮಗಿರಿಯ ಮೂಲೆಗೆ
ನಿಲುಕಿ ಸಕಲ ಮ್ಲೇಚ್ಛ ಭೂಪಾ
ವಳಿಯ ಭಂಗಿಸಿ ಹೇರಿಸಿದನೊಂಟೆಗಳಲಾ ಧನವ ೭

ಹೇರಿದವು ಬಹು ಧನವನೊಂಟೆಗ
ಳಾರು ಸಾವಿರ ಮಿಕ್ಕ ವಸ್ತುವ
ಹೇರಿದವುಯೆತ್ತುಗಳ ಹೂಡಿದ ಭಂಡಿ ಸಾವಿರವು
ಆರು ಲಕ್ಷ ತುರಂಗ ಉಷ್ಟ್ರಗ
ಳಾರು ಕೋಟಿಗಳಾನೆ ಗಣನೆಯ
ಮೀರಿದವು ಮೃಗ ಪಕ್ಷಿ ಕೋಣನ ಕುರಿಯ ಹಿಂಡುಗಳ ೮

ಮರಳಿತೀತನ ಸೇನೆ ಬಂದನು
ಪುರಕೆ ಕಂಡನು ಧರ್ಮಪುತ್ರನ
ಚರಣಕೆರಗಿದನಖಿಳ ವಸ್ತುವ ಬೇರೆ ತೋರಿಸಿದ
ಅರಸನುತ್ಸವವನು ವೃಕೋದರ
ನರ ನಕುಲ ಸಹದೇವನಂತಃ
ಪುರದ ಹರುಷದ ಸಿರಿಯನದನೇವಣ್ಣಿಸುವೆನೆಂದ ೯

ಕಳವು ಹುಸಿ ಹಾದರ ವಿರೋಧ
ಸ್ಖಲಿತವಾರಡಿ ಬಂದಿ ದಳದುಳ
ಬೆಳುಗವತೆಯನ್ಯಾಯ ಪರಿಭವ ಠಕ್ಕು ಡೊಳ್ಳಾಸ
ಹಳಿವು ವಂಚನೆ ಜಾತಿ ಸಂಕರ
ಕೊಲೆಯ ಡಾವರ ವಿಕೃತಿ ಮಾಯಾ
ವಳಿಗಳಡಗಿದವೀ ಯುಧಿಷ್ಠಿರ ನೃಪನ ರಾಜ್ಯದಲಿ ೧೦

ನೃಗನ ಭರತನ ದುಂದುಮಾರನ
ಸಗರ ಪುರೂರವ ಸನಾತನ
ಮಗನ ನಹುಷನ ಕಾರ್ತವೀರ್ಯನ ನಳನ ದಶರಥನ
ಹಗಲಿರುಳು ವಲ್ಲಭರ ವಂಶದ
ವಿಗಡರಲಿ ಯಮಸೂನು ಸರಿಯೋ
ಮಿಗಿಲೊ ಬಲ್ಲವನಾರೆನಲು ಸಲಹಿದನು ಭೂತಳವ ೧೧

ದ್ವಾಪರದ ಮರೆ ಜವನಿಕೆಯಲೀ
ದ್ವಾಪರವೊ ಕೃತಯುಗವೊ ಧರ್ಮದ
ರೂಪು ನಾನಾ ಮುಖದಲವತರಿಸಿತೊ ದಿಗಂತದಲಿ
ಸ್ಥಾಪಿಸಿತು ವರ್ಣಾಶ್ರಮದ ಧ
ರ್ಮೋಪಚಯವೆರಡಂಘ್ರಿ ಮುರಿದು ವಿ
ರೂಪವಾದುದಧರ್ಮವೀ ಧರ್ಮಜನ ರಾಜ್ಯದಲಿ ೧೨

ಬಡಗಲುತ್ತರ ಕುರುಗಳಿತ್ತಲು
ಪಡುವಲುದಧಿ ವಿಭೀಷಣನ ಪುರ
ಗಡಿ ಕೃತಾಂತನ ದೆಸೆಗೆ ಮೂಡಲು ದಿನಪನುದಯಾದ್ರಿ
ಪೊಡವಿಯದರಲಿ ಯಮಜನಾಣೆಗೆ
ನಡುಗುವುದು ರಾಯಂಗೆ ತೆತ್ತುದು
ಗಡ ಸುವಸ್ತುವನೇನಸಾಧ್ಯವು ಕೃಷ್ಣನೊಲಿದರಿಗೆ ೧೩

ಕಳನ ಸವೆದರು ಮೂರು ಯೋಜನ
ವಳಯದಲಿ ಪಡಿಯಗಳು ಕೋಟಾ
ವಳಯ ಸುಯ್ಧಾನದಲಿ ಹೊಯ್ದರು ರತ್ನ ಕಾಂಚನವ
ಕೆಲದೊಳೈಗಾವುದದೊಳಿಕ್ಕಿದ
ತಳಿಯ ಮಧ್ಯದೊಳಖಿಳ ವಸ್ತ್ರಾ
ವಳಿಯನೊಟ್ಟಿದರದರ ಕೆಲದಲಿ ರಾಯ ಕೇಳೆಂದ ೧೪

ಹತ್ತು ಯೋಜನ ವಳಯದಲಿ ಮಿಗೆ
ಸುತ್ತು ಬೇಲಿಯ ಮಧ್ಯದಲಿ ಹಯ
ಮತ್ತಗಜ ರಥ ಗೋ ಮಹಿಷಿ ವರ ಸೈರಿಭದ ಚಯಕೆ
ಉತ್ತಮಾಂಗನೆಯರಿಗೆ ಭವನಗ
ಳಿತ್ತ ಬೇರಿರವಾಯ್ತು ನೃಪ ಯಾ
ಗೋತ್ತಮಕೆ ಪರುಠವಿಸಿದರು ಭೂಪಾಲ ಕೇಳೆಂದ ೧೫

ಬಳಿದ ಸೊದೆಗಳ ಬಾವಿ ನೂರರ
ವಳಯ ತುಂಬಿತು ತೈಲ ಘೃತ ಮಧು
ಗಳಲಿ ವರ ಗುಡ ಶರ್ಕರಾದಿಯ ಕಣಜ ಕೋಟಿಗಳು
ಕಳವೆಯಕ್ಕಿಯ ಗೋಧಿ ಕಡಲೆಯ
ವಿಳಸ ರಾಶಿಯದೇಸು ಯೋಜನ
ದಳತೆಯೆಂದಾರರಿವರೆಂದನು ಮುನಿ ನೃಪಾಲಂಗೆ ೧೬

ನೆರೆದುದರ್ಘವನುತ್ತವವನೀ
ಶ್ವರರು ವಶವಾದರು ಚತುಸ್ಸಾ
ಗರದ ಮಧ್ಯದಲಾಣೆ ಸಂದುದು ಧರ್ಮನಂದನನ
ಕರೆಸು ಬೇಹವರನು ಮಹೀಶಾ
ಧ್ವರಕೆ ಸಮಯವಿದೆಂದು ಪಾರಾ
ಶರಿಯ ಧೌಮ್ಯರು ಮಂತ್ರ ಶಾಲೆಯೊಳೆಂದರವನಿಪಗೆ ೧೭

ಹೋಗು ಫಲುಗುಣ ಕಂಸ ಮಥನನ
ಬೇಗ ಬಿಜಯಂಗೈಸಿ ತಾ ನೃಪ
ಯಾಗವಾತನ ಹೊರೆ ಮದೀಯ ಜಯಾಭಿವೃದ್ಧಿಗಳು
ಆಗ ಹೋಗಾತನದು ತಟ್ಟಯ
ವಾಗದೀ ಕ್ಷಣವೆನಲು ಮನದನು
ರಾಗದಲಿ ಕಲಿಪಾರ್ಥ ಬಂದನು ಕಂಡನಚ್ಯುತನ ೧೮

ಬಿನ್ನವಿಸಿದನು ದಿಗ್ವಿಜಯ ಸಂ
ಪನ್ನ ವಸ್ತು ವಿಧಾನವನು ಮೇ
ಲಿನ್ನು ದೇವರು ಬಲ್ಲಿರುತ್ತರ ಕಾರ್ಯ ಸಂಗತಿಯ
ನಿನ್ನ ಕೃಪೆಯಲಿ ರಾಜಮುಖ ನಿ
ಷ್ಪನ್ನವಾದರೆ ಬೊಪ್ಪನಿಂದ್ರನ
ಮನ್ನಣೆಯ ಮೈ ಸೋಂಕಿನನೋಲಗ ಸುಲಭವಹುದೆಂದ ೧೯

ಕರೆಸಿ ಯಾದವ ನಾಯಕರ ಸಂ
ಹರಣೆಯನು ನಿಜಪುರದ ಕಾಹಿಂ
ಗಿರಿಸಿ ಬಲದೇವಂಗೆ ನೇಮಿಸಿ ಸಕಲ ರಕ್ಷಣವ
ತರಿಸಿ ಭಂಡಾರದಲಿ ವಿವಿಧಾ
ಭರಣ ವಸನಾದಿಗಳ ಹೇರಿಸಿ
ಹರಿ ಧನಂಜಯನೊಡನೆ ಬಂದನು ಬಂಧುಜನ ಸಹಿತ ೨೦

ಇದಿರುವಂದನು ಧರ್ಮಸುತ
ಪದ ಪಯೋಜದಲೆರಗಿದನು ನಿನ
ಗಿದು ವಿನೋದವಲೇ ವಿಮುಕ್ತಗೆ ಭಕ್ತ ಸಂಸ್ಮರಣ
ಕುದಿದು ಮರುಗಿದವರಸಿ ನಿನ್ನಯ
ಪದವ ಕಾಣದೆ ಶ್ರುತಿಗಳೆಮ್ಮಯ
ಸದನವಖಿಳಾಮ್ನಾಯ ನಿಕರವನೇಡಿಸುವದೆಂದ ೨೧

ನಗುತ ಸಾಕೇಳೆಂದು ರಾಯನ
ತೆಗೆದು ತಳ್ಕಿಸಿ ಕೈಯ್ಯ ತಳುಕಿನೊ
ಳಗಧರನು ನೃಪಸಭೆಗೆ ಬಿಜಯಂಗೈದನೊಲವಿನಲಿ
ಮುಗಿದ ಕರದಲಿ ವ್ಯಾಸ ಧೌಮ್ಯಾ
ದಿಗಳು ಮೈಯಿಕ್ಕಿದರಖಿಳ ಮಂ
ತ್ರಿಗಳು ಸಚಿವರು ನೆರೆದುದಾಳೋಚನೆಯ ಭವನದಲಿ ೨೨

ಕಳುಹಿದನು ನಾನಾ ನೃಪರ ಮಂ
ಡಲಕೆ ದೂತರನಖಿಳ ಋಷಿ ಸಂ
ಕುಳಕೆ ಶಿಷ್ಟರ ಪರುಠವಿಸಿದನು ಹಸ್ತಿನಾಪುರಿಗೆ
ಕಳುಹಿದನು ನಕುಲನನು ಬಳಿಕ
ತ್ತಲು ನೃಪಾಧ್ವರ ಶಾಲೆಗಲ್ಲಿಯ
ನೆಲನ ಶೋಧಿಸೆ ಕರೆಸಿದರು ಬಹುವಿಧದ ಶಿಲ್ಪಿಗರ ೨೩

ಮಯನ ಮತದಲಿ ವಿಶ್ವಕರ್ಮನ
ನಯ ವಿವೇಕದಲಮಲ ಮಖ ಶಾ
ಲೆಯನು ನಿರ್ಮಿಸಿಧರು ಸುಲಕ್ಷಣ ಶಾಸ್ತ್ರಸೂತ್ರದಲಿ
ನಿಯತ ಪತ್ನೀಶಾಲೆ ಜನವೇ
ದಿಯ ವರಾಂತರ್ವೇದಿ ಮಖವೇ
ದಿಯ ಬಹಿರ್ವೇದಿಗಳನಳವಡಿಸಿದರು ವಹಿಲದಲಿ ೨೪

ಬಿಗಿದ ಬಿಂಗಾರಿಗಳ ಮೇಲ್ಕ
ಟ್ಟುಗಳ ಮಣಿಮಯ ಸೂಸಕದ ಲೋ
ವೆಗಳ ಮುಖಮಂಟಪದ ಚೌರಿಯ ನವ ಫಲಾವಳಿಯ
ಹೊಗರ ನೀಲದ ಸರಿಯು ನೆಲಗ
ಟ್ಟುಗಳ ಚಪ್ಪರದೆಡೆಯೆಡೆಯ ಚೌ
ಕಿಗೆಯ ಚತುರಂಗದ ವಿಚಿತ್ರದ ರಚನೆ ಚೆಲುವಾಯ್ತು ೨೫

ಪುರದ ಹೊರವಳಯದಲಿ ಯಮುನಾ
ವರನದಿಯ ತೀರದಲಿ ಧರಣೀ
ಶ್ವರರಿಗರಮನೆ ಮಾಡಿದರು ನವ ರತುನಮಯವಾಗಿ
ಸುರಪುರದ ಮಾರಾಂಕ ಭುಜಗೇ
ಶ್ವರನ ಭೋಗಾವತಿಯ ಶಿಲ್ಪದ
ಗರುವೆನಿಸಿತೀ ನಗರ ನಾರಾಯಣನ ಕರುಣದಲಿ ೨೬

ಏಳನೆಯ ಸಂಧಿ

ಸೂ. ಸಕಲ ಋಷಿ ಮುಖ್ಯರು ಮಹೀ ಪಾ
ಲಕರು ನೆರೆದರು ವಿಶ್ವ ಭೂತ
ಪ್ರಕರ ದಣಿದುದು ಧರ್ಮಪುತ್ರನ ರಾಜಸೂಯದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ದೂತರು ಹರಿದರವನೀ
ಪಾಲರಿಗೆ ಋಷಿಗಳಿಗೆ ಭೂಸುರ ವೈಶ್ಯ ಶೂದ್ರರಿಗೆ
ಹೇಳಲೇನದುಬುತವನಂಬುಧಿ
ವೇಲೆಯಲಿ ಮಧ್ಯದ ಸಮಸ್ತ ಜ
ನಾಳಿ ನೆರೆದುದು ವಿಲಸದಿಂದ್ರಪ್ರಸ್ಥ ನಗರಿಯಲಿ ೧

ಚೋಳ ಸಿಂಹಳ ಪಾಂಡ್ಯ ಕೇರಳ
ಮಾಳವಾಂಧ್ರ ಕರೂಷ ಬರ್ಬರ
ಗೌಳ ಕೋಸಲ ಮಗಧ ಕೇಕಯ ಹೂಣ ಸೌವೀರ
ಲಾಳ ಜೋನೆಗ ಜೀನ ಕುರು ನೇ
ಪಾಳ ಶಿಬಿ ಕಾಶ್ಮೀರ ಬೋಟ ವ
ರಾಳ ವರ ದೇಶಾಧಿಪತಿಗಳು ಬಂದರೊಗ್ಗಿನಲಿ ೨

ಭೂರಿ ಭೂರಿಶ್ರವನು ಬಾಹ್ಲಿಕ
ಶೂರಸೇನ ಕಳಿಂಗ ಸಲೆ ಗಾಂ
ಧಾರ ಸೌಬಲ ಸೋಮದತ್ತ ಸುಷೇಣ ಭಗದತ್ತ
ವೀರ ಪೌಂಡ್ರಕನೇಕಲವ್ಯ ಸು
ರಾರಿಗಳು ಶಿಶುಪಾಲ ಯವನ ಕು
ಮಾರ ಪೌರವ ದಂತವಕ್ತ್ರರು ಬಂದರೊಗ್ಗಿನಲಿ ೩

ಸಕಳ ದಳ ಮೇಳಾಪದಲಿ ಭೀ
ಷ್ಮಕನು ರುಕ್ಮನು ಚಿತ್ರರಥ ಸಾ
ಲ್ವಕನು ರೋಹಿತ ರೋಚಮಾನ ಸಮುದ್ರಸೇನಕರು
ಪ್ರಕಟ ಬಲರುತ್ತರ ದಿಶಾ ಪಾ
ಲಕರು ಕುರು ಪರಿಯಂತ ರಾಜ
ಪ್ರಕರ ನೆರೆದುದು ವಿಳಸದಿಂದ್ರಪ್ರಸ್ಥ ನಗರಿಯಲಿ ೪

ದ್ರುಪದ ಧೃಷ್ಟದ್ಯುಮ್ನ ರಣಲೋ
ಲುಪ ಯುಧಾಮನ್ಯೂತ್ತಮೌಂಜಸ
ರುಪಚಿತರು ಬಂದರು ಸಗಾಢದಲಿವರ ಬಾಂಧವರು
ಕೃಪ ಜಯದ್ರಥ ಭೀಷ್ಮ ಮಾದ್ರಾ
ಧಿಪತಿ ಕರ್ಣ ದ್ರೋಣ ಮೊದಲಾ
ದಪರಿಮಿತ ಬಲ ಸಹಿತ ಕೌರವರಾಯ ನಡೆತಂದ ೫

ಗುರುತನೂಜ ಸುಶರ್ಮ ವಂಗೇ
ಶ್ವರ ಬೃಹದ್ರಥ ಭೀಮರಥ ದು
ರ್ಮರುಷಣರು ವರ ಭಾನುದತ್ತ ವಿಕರ್ಣ ದುಸ್ಸಹರು
ವರ ವಿವಿಂಶತಿ ದೀರ್ಘಭುಜ ದು
ರ್ದರುಶ ದುರ್ಜಯ ಶಂಕು ಕರ್ಣಾ
ದ್ಯರು ಸಹಿತ ದುಶ್ಶಾಸನನು ಹೊರವಂಟನರಮನೆಯ ೬

ಬಂದರೈ ಚತುರಂಗದವನಿಪ
ವೃಂದವವರವರುಚಿತ ಮಿಗಿಲಿದಿ
ರ್ವಂದು ಭೀಷ್ಮ ದ್ರೋಣ ಕೃಪ ಧೃತರಾಷ್ಟ್ರರಿಗೆ ನಮಿಸಿ
ವಂದನೀಯರಿಗೆರಗಿ ಸಮರಿಗೆ
ನಿಂದು ಕುಶಲಕ್ಷೇಮ ಸಂಗತಿ
ಯಿಂದ ಸತ್ಕರಿಸಿದನು ನೃಪ ವಿದುರಾದಿ ಬಾಂಧವರ ೭

ಜನಪ ಕೇಳೀಚೆಯಲಿ ಬಂದುದು
ಮುನಿಗಳಾಂಗಿರ ಕಣ್ವ ಭೃಗು ಜೈ
ಮಿನಿ ಸುಮಂತ ವಸಿಷ್ಠ ಶೌನಕ ಗಾರ್ಗ್ಯ ಬೃಹದಶ್ವ
ಸನಕ ಶುಕ ಜಾಬಾಲಿ ತಿತ್ತಿರಿ
ವಿನುತ ಮಾರ್ಕಂಡೇಯ ಮುದ್ಗಲ
ತನಯ ರೋಮಶ ಕುತ್ಸವತ್ಸರು ಶೈಬ್ಯ ನಾರದರು ೮

ಚ್ಯವನ ಗೌತಮ ವೇಣುಜಂಘ
ಪ್ರವರ ಕೌಶಿಕ ಸತ್ಯತಪ ಭಾ
ರ್ಗವ ಸುಮಾಲಿ ಸುಮಿತ್ರ ಕಾಶ್ಯಪ ಯಾಜ್ಞವಲ್ಕ್ಯ ಋಷಿ
ಪವನ ಭಕ್ಷಕ ದೀರ್ಘ ತಪ ಗಾ
ಲವನು ಶಿತ ಶಾಂಡಿಲ್ಯ ಮಾಂಡ
ವ್ಯ ವರರೆಂಬ ಮಹಾ ಮುನೀಂದ್ರರು ಬಂದರೊಗ್ಗಿನಲಿ ೯

ದೇಶ ದೇಶಾಂತರದ ವಿದ್ಯಾ
ಭ್ಯಾಸಿಗಳು ಮೊದಲಾಗಿ ವರ್ಣ ನಿ
ವಾಸಿಗಳು ಫಲಮೂಲ ದಧಿ ಘೃತ ದುಗ್ಧ ಭಾರದಲಿ
ಆ ಸಮಸ್ತ ಮಹೀತಳದ ಧನ
ರಾಶಿ ಜನ ಸಂತತಿಯನೇಕ ನಿ
ವಾಸದಲಿ ನೆರೆ ಕಾಣಲಾಯಿತು ನೃಪತಿ ಕೇಳೆಂದ ೧೦

ವಿಕಳ ವಾಮನ ಮೂಕ ಬಧಿರಾಂ
ಧಕರು ಮಾಗಧ ಸೂತ ವಂದಿ
ಪ್ರಕರ ಮಲ್ಲ ಮಹೇಂದ್ರಜಾಲಿ ಮಹಾಹಿ ತುಂಡಿತರು
ಸುಕವಿ ತಾರ್ಕಿಕ ವಾಗ್ಮಿ ವೈತಾ
ಳಿಕ ಸುಗಾಯಕ ಕಥಕ ಮಾರ್ದಂ
ಗಿಕರು ನೆರೆದುದು ನಿಖಿಳ ಯಾಚಕ ನಿಕರ ಸಂದಣಿಸಿ ೧೧

ಕರೆಸಿ ಭೀಷ್ಮಂಗೆರಗಿ ನುಡಿದನು
ಧರಣಿಪತಿ ಬಾಲಕರು ನಾವ
ಧ್ವರವಿದಗ್ಧದ ರಾಜಸೂಯ ಮಹಾ ಮಹೀಶ್ವರರು
ನೆರೆದುದಖಿಳ ದ್ವಿಪ ಜನವಾ
ದರಿಸಲರಿಯೆನು ಹೆಚ್ಚು ಕುಂದಿನ
ಕುರುಡನೀಕ್ಷಿಸಲಾಗದೆಂದನು ಮುಗಿದು ಕರಯುಗವ ೧೨

ಚಿಂತೆಯೇಕೈ ಕೃಷ್ಣನಾರೆಂ
ದೆಂತು ಕಂಡೆ ಚತುರ್ದಶಾಂಶದ
ತಂತು ರೂಪನು ತಾನೆಯೆನ್ನದೆ ನಿನಗೆ ಶ್ರುತಿವಚನ
ತಂತುವಿನ ಪಟ ಮೃತ್ತಿಕೆಯ ಘಟ
ದಂತೆ ಜಗವೀತನಲಿ ತೋರ್ಕು ಮು
ರಾಂತಕನ ಸುಯ್ಧಾನ ನಿನಗಿರಲಂಜಲೇಕೆಂದ ೧೩

ಕರೆಸು ಧೌಮ್ಯಾದಿಗಳನಿಲ್ಲಿಯ
ಪರುಠವವ ಮಾಡೆಂದು ಭೀಷ್ಮನು
ಗುರುಸಹಿತ ಕೈಕೊಂಡನೆಲ್ಲರ ಮೇಲುನೋಟವನು
ಅರಸ ಕೇಳ್ ಧೃತರಾಷ್ಟ್ರ ಬಾಹ್ಲಿಕ
ವರ ಬೃಹದ್ರಥ ಸೋಮದತ್ತರು
ಪರಮ ಪೂಜ್ಯರು ಮಾನನೀಯರು ಯಜ್ಞವಾಟದಲಿ ೧೪

ಸವನ ಸಾಧನ ಸರ್ವ ಸಂಭಾ
ರವನು ಧೌಮ್ಯನು ತರಿಸಿ ಕೊಡಿಸುವ
ನವನಿಪತಿಗಳ ಪಾರುಪತ್ಯದ ನೋಟ ಸಂಜಯಗೆ
ವಿವಿಧ ಋಷಿ ಯಾಜ್ಞಿಕರು ಮಾಂತ್ರಿಕ
ನಿವಹ ಸಹದೇವಂಗೆ ಭೋಜ್ಯ
ಪ್ರವರದಧಿಕಾರದ ನಿಯೋಗ ಯುಯುತ್ಸುವಿನ ಮೇಲೆ ೧೫

ನೆರೆದ ಭೂಸುರ ತತಿಯ ನೋಟಕೆ
ಕರೆಸಿ ಕುಳ್ಳಿರಿಸುವನು ಸಾತ್ಯಕಿ
ಭರದಿನೆಂಜಲ ತೆಗೆಸಿ ಸಾರಿಸುವುದು ವಿಕರ್ಣಂಗೆ
ಅರಸ ಕೇಳ್ ಭೋಜನದ ಸಮನಂ
ತರದ ವೀಳೆಯ ಗಂಧ ಮಾಲ್ಯಾಂ
ಬರವನೀವಧಿಕಾರ ದುಶ್ಶಾಸನನ ವಶವಾಯ್ತು ೧೬

ವಿತತ ಭೂಸುರ ದಕ್ಷಿಣೆಗೆ ಗುರು
ಸುತ ನಿಯೋಗ ಸಮಸ್ತ ರತ್ನ
ಪ್ರತತಿಗಳನಾರೈದು ತರಿಸುವನಾ ಕೃಪಾಚಾರ್ಯ
ಘೃತವು ದಧಿ ಮಧು ತೈಲ ಕಸ್ತೂರಿ
ಸಿತ ಲವಣ ಸಂಭಾರ ಶಾಕೋ
ಚಿತ ಸುವಸ್ತುವ ಕೊಡುವ ಕೊಂಬಾರೈಕೆ ವಿದುರಂಗೆ ೧೭

ಅರಸ ಕೇಳೈ ಪಾಕಶಾಲೆಯ
ಹಿರಿಯ ಹಂತಿಗಳಲಿ ಚತುರ್ದಶ
ಕರಿ ಘಟೆಗಳಿಡೆಯಾಡುವವು ಸಂಭಾರವನು ಹೇರಿ
ಹರಿವ ರಜತ ದ್ರೋಣಿಯಲಿ ಸುರಿ
ಸುರಿದು ಸೇದುವ ರಾಟಳಂಗಳೊ
ಳಿರೆವ ಘೃತ ಮಧು ತೈಲ ಧಾರಾ ರಚನೆ ಚೆಲುವಾಯ್ತು ೧೮

ಧರಣಿಪತಿ ಕೇಳ್ ಶೂದ್ರ ಮೊದಲಾ
ಗಿರೆ ಸಮಸ್ತ ಪ್ರಜೆ ವಿಧಾವಂ
ತರಿಗೆ ಭೋಜನ ಗಂಧ ಮಾಲ್ಯಾಂಬರ ವಿಲೇಪನದ
ಉರು ನಿಯೋಗಿಗಳಿಂದ್ರಸೇನನು
ವರ ವಿಶೋಕನು ರುಗ್ಮನತಿ ಬಂ
ಧುರ ಸಮೀರ ಪತಾಕಸೇನನು ಸೂತರೈವರಿಗೆ ೧೯

ಅರಸ ಕೇಳೈ ಬಳಿಕ ಪೃಥ್ವೀ
ಶರರಿಗಭಿನವ ಗಜ ರಥಾವಳಿ
ತುರಗ ಶಸ್ತ್ರಾಸ್ತ್ರಗಳನೀವ ನಿಯೋಗ ಕರ್ಣನದು
ಕರೆಕರೆದು ಯೋಗ್ಯಾತಿಶಯವರಿ
ವರಿದು ಯೋಷಿಜ್ಜನಕೆ ಮಾದ್ರೀ
ಶ್ವರನು ಕೊಡುವವನಾದನಧಿಕೋತ್ಸವದ ಸಿರಿಮಿಗಿಲು ೨೦

ಸಕಲ ಮಣಿ ಕಾಂಚನ ದುಕೂಲ
ಪ್ರಕರವೀ ದುರಿಯೋಧನ ವಶ
ನಕುಲನವರವರುಚಿತ ವೃತ್ತಿಯ ಮಧುರ ವಚನದಲಿ
ಪ್ರಕಟಿಸುವನವನಿವರ ಸೇನಾ
ನಿಕರದಾರೈಕೆಗಳು ಪಾಂಚಾ
ಲಕನಿಗಾದುದು ರಂಜಿಸಿತು ಪರಿಪಾಟಿಯೊಡ್ಡವಣೆ ೨೧

ಆದುದನುಪಮ ಕುಂಡವಂತ
ರ್ವೇದಿಯ ಸಮೀಪದಲಿ ಹೊರೆಗಳ
ಶೋಧಿಸಿಧ್ಮ ಕಂಶಂಗಳಾ ಸ್ಥಂಡಿಲದ ಸೀಮೆಯಲಿ
ಆದರಿಸಿ ಪರಿಚಾರಕರು ಸಂ
ಪಾದಿಸಿದ ಘೃತ ಚರು ಪುರೋಡಾ
ಶಾದಿ ಸಂಭಾರೌಘವನುವಾಯಿತ್ತು ನಿಮಿಷದಲಿ ೨೨

ಕರೆಸಿದರು ಋತ್ವಿಕ್ಕುಗಳನ
ಧ್ವರಿಯನಾದನು ಯಾಜ್ಞವಲ್ಕ್ಯನು
ವರ ಸುಮಿತ್ರಾಂಗಿರಸರುಗಳುದ್ಗಾತೃ ಹೋತೃಗಳು
ಪರಮ ಜೈಮಿನಿ ಕಠ ತಿ
ತ್ತಿರಿಗಳಾಗ್ನೀಧ್ರಾದಿ ರಾಜಾ
ಧ್ವರ ನಿಯೋಗಿಗಳಾಯ್ತು ವೇದವ್ಯಾಸನಾಜ್ಞೆಯಲಿ ೨೩

ಆ ಸದಸ್ಯತ್ವವನು ವೇದ
ವ್ಯಾಸ ಕೈಕೊಂಡನು ಮುನೀಂದ್ರ ಮ
ಹಾ ಸಮಾಜದ ಬಯಕೆಗಾ ಶಾಂಡಿಲ್ಯ ನಾರದರು
ಭೂಸುರರು ಸಾಮಾಜಿಕರು ಧರ
ಣೀಶ ಯಜ್ಞೋಪಕ್ರಮದ ವಿ
ನ್ಯಾಸನದಲಿ ಬಂದನು ಯುಧಿಷ್ಠಿರನಚ್ಯುತನ ಹೊರೆಗೆ ೨೪

ದೇವ ನಿನ್ನಯ ಕರುಣದಲಿ ಸಕ
ಳಾವನೀಪತಿ ವಿಜಯ ಬಹಳಾ
ರ್ಥಾವಲಂಬನವೀ ಮಖ ಪ್ರಾರಂಭ ವಿಸ್ತಾರ
ಈ ವಿಜಯ ವೈಭವವೆಮಗೆ ಸಂ
ಭಾವಿತವೆ ವರ ರಾಜಸೂಯಕೆ
ದೇವ ದೀಕ್ಷಿತನಾಗು ನೀನೆಂದೆರಗಿದನು ಪದಕೆ ೨೫

ಮಣಿದು ಹಿಡಿದೆತ್ತಿದನು ರಾಯನ
ಹಣೆಯನನುಪಮ ಕರುಣ ನಿಧಿ ಕಡು
ಗುಣಿಯೆ ಬಾಯೆನ್ನಾನೆ ಬಾಯೆಂದಪ್ಪಿ ಪೈದಡವಿ
ಗುಣವಹುದು ನಿನಗಿಂದುಕುಲ ದಿನ
ಮಣಿಯೆ ದೀಕ್ಷಿತನಾಗು ಮದವಾ
ರಣನೆ ದೀಕ್ಷಿತನಾಗೆನುತ ಬೋಳೈಸಿದನು ಹರಸಿ ೨೬

ಎನೆ ಹಸಾದವೆನುತ್ತ ಯಮುನಂ
ದನನು ವೈಶಾಖದ ಚತುರ್ದಶಿ
ದಿನದಲುತ್ತರ ಪೂರ್ವವೇದಿ ವರಾಭ್ಯುದೈಕ್ಯದಲಿ
ವಿನುತ ಪುಣ್ಯಾಹದ ಮಹಾವಾ
ಚನೆಯ ನಿಗಮ ಪವಿತ್ರ ಜಲ ಪಾ
ವನನು ಮರುದಿನ ಯಜ್ಞ ದೀಕ್ಷಿತನಾದನೊಲವಿನಲಿ ೨೭

ಹುದಿದು ನವನೀತಾನುಲೇಪದ
ಹೊದೆದ ಕೃಷ್ಣಾಜಿನದ ಹಸ್ತಾ
ಗ್ರದಲೆಸೆವ ಸಾರಂಗ ಶೃಂಗದ ಯಾಜಮಾನ್ಯದಲಿ
ಉದಧಿಗೊರೆಗಟ್ಟುವ ಚತುರ್ವೇ
ದದ ಮಹಾಘೋಷದಲಿ ಮಖ ಕುಂ
ಡದ ತದಂತರ್ವೇದಿಗೈತಂದನು ಮಹೀಪಾಲ ೨೮

ನೆರೆದುದವನೀಪಾಲ ಜನ ಸಾ
ಗರ ಬಹಿರ್ವೇದಿಯ ಮಹಾ ಚ
ಪ್ಪರದೊಳಗೆ ತಂತಮ್ಮ ಸಿಂಹಾಸನ ಸಗಾಢದಲಿ
ಪರಮ ಋಷಿಗಳ ವೇದಘೋಷೋ
ತ್ಕರ ನೃಪಾಧ್ವರ ವಿಷಯ ತರ್ಕ
ಸ್ಫುರಣ ಕೋಳಾಹಳದ ಕಳಕಳ ತುಂಬಿತಂಬರವ ೨೯

ಚರು ತಿಲದ ರಾಶಿಗಳು ಸ್ರುಕ್‌ಸ್ರುವ
ಬರುಹಿಗಳ ಬಲು ಹೊರೆಗಳಾಜ್ಯೋ
ತ್ಕರದ ಪತ್ರಾವಳಿಯ ನಿರ್ಮಳ ಸಾರ ಸಮಿಧೆಗಳ
ಪರಿವಿಡಿಯುದಾಮಿಕ್ಷೆಗಳ ಪರಿ
ಕರದ ವಿವಿಧ ದ್ರವ್ಯಮಯ ಬಂ
ಧುರದಳೆಸೆದುದು ಯಜ್ಞ ವಾಟಿಕೆ ರಾಜಸೂಯದಲಿ ೩೦

ಬಳಸಿದರು ಪರಿಮಥ್ಯಮಾನಾ
ನಳನನಗ್ರದ ಸುಪ್ರಣೀತಾ
ನಳನನಾಹವನೀಯ ಗಾರುಹಪತ್ಯ ದಕ್ಷಿಣದ
ಜ್ವಲಿತವೆನೆ ಮೃಗಚರ್ಮವೀಜನ
ವಳಯದೊಳು ಪ್ರಾಗ್ವಂಶದಲಿ ಪರಿ
ಮಿಳಿತವಾಯ್ತು ಸದಸ್ಯ ಋತ್ವಿಜ್ಞರ ವಿಧಾನದಲಿ ೩೧

ಏವಮೇವಾಸ್ಮಾತ್ತದಿತಿ ಸಂ
ಭಾವನೀಯಮಿದಂ ಚ ನೈತ
ನ್ನೈವಮಿದಮೇವಂ ಚ ಶ್ರುತಿ ಸಂಸಿದ್ಧಮಿದಮೆನಲು
ಕೋವಿದರ ಕಳಕಳಿಕೆಯನ್ಯೋ
ನ್ಯಾವಮರ್ದದ ರಭಸವೀ ಭೂ
ಪಾವಳಿಗಳುಪಹಾಸ್ಯ ಘೋಷಕೆ ಕವಚವಾಯ್ತೆಂದ ೩೨

ವ್ಯಾಹೃತಿಯ ಶಿಕ್ಷಾಕ್ಷತದ ವಿಮ
ಳಾಹುತಿ ಸ್ವಾಹಾವಷಟ್ಕೃತಿ
ಸೋಹಿ ತಂದುದು ಸುರರ ಸುಹವಿರ್ಭಾಗ ಭೋಗಿಗಳ
ಲೋಹಿತಾಶ್ವನ ರಚನೆಯೊಳು ಹರಿ
ಸಾಹರಿಯೊಳುಬ್ಬೆದ್ದ ವರ್ಚಿಗ
ಳಾಹ ಸಪ್ತಕವೋ ಸಹಸ್ರಕವೆನಿಸಿ ಪೊಸತಾಯ್ತು ೩೩

ತ್ರಿದಿವವನು ತುಡುಕಿತು ಹವಿರ್ಗಂ
ಧದ ಗಘಾವಣೆ ಧೂತ ಧೂಮನ
ತುದಿ ತಪೋಲೋಕದಲಿ ತಳಿತುದು ಸತ್ಯಲೋಕದಲಿ
ತ್ರಿದಶರುರೆ ಬಾಯಾಡಿಸಿದರ
ಗ್ಗದ ಧ್ರುವಾದಿಗಳನು ಸುತೃಪ್ತಿಯ
ಹೊದರುದೇಗಿನ ಹೊಟ್ಟೆ ನೂಕಿತು ಹರಿ ಹಯಾದಿಗಳ ೩೪

ದಣಿದುದಲ್ಲಿ ಸುರೌಘವೀ ದ
ಕ್ಷಿಣೆಯಲೂಟದಲಾದರಣೆ ಮಂ
ನ್ನಣೆಯಲವನೀಸುರರು ಹಿಗ್ಗಿದರಿಲ್ಲಿ ಪಿರಿದಾಗಿ
ಎಣಿಸಬಹುದೇ ಭೋಜನದ ಸಂ
ದಣಿಯನೀಸ್ಸೆಸೆಂದು ಭಾರಾಂ
ಕಣದ ಭೂರಿಯ ವಿವರವನು ಬಣ್ಣಿಸುವನಾರೆಂದ ೩೫

ವೇದ ವೇದಾಂಗದ ರಹಸ್ಯ ವಿ
ವಾದ ತರ್ಕಸ್ಮೃತಿಗಳಂತ
ರ್ವೇದಿಯಲಿ ಘನಲಹರಿ ಮಸಗಿತು ತಂತ್ರ ಸಂತತಿಯ
ಆದುದತ್ತಲು ಗದ್ಯ ಪದ್ಯ ವಿ
ನೋದ ನರ್ತನ ವಾದ್ಯ ಸಂಗೀ
ತಾದಿ ಸಕಲ ಕಲಾನುರಂಜನೆ ರಾಜವರ್ಗದಲಿ ೩೬

ಆ ಋಷಿಗಳಾ ಕ್ಷತ್ರ ಜನದಾ
ಭೂರಿ ನಿಕರದ ವೇದಶಾಸ್ತ್ರ ವಿ
ಚಾರಣರ ಚಾರಣರ ಸಂಗೀತಾದಿ ಕಳಕಳದ
ಆರುಭಟೆ ಮಥಿತಾಂಬುನಿಧಿಯೊಡ
ನಾರುವವೊಲುಬ್ಬೆದ್ದ ಬಲು ಜ
ರ್ಝರವೆನೆ ಜಡಿದುದು ಯುಧಿಷ್ಠಿರ ರಾಜಸೂಯದಲಿ ೩೭

ಏಳು ದಿನ ಪರಿಯಂತ ಗಳಿಗೆಗೆ
ಮೇಲೆ ಮೇಲಧ್ವರದ ಲಕ್ಷ್ಮಿ ಥ
ಡಾಳಿಸಿತು ಜಾಳಿಸಿ ಚತುರ್ದಶ ಲೋಕ ಚೇತನವ
ಕೇಳಿದೈ ಜನಮೇಜಯ ಕ್ಷಿತಿ
ಪಾಲ ಸುರಲೋಕದಲಿ ಪಾಂಡುವಿ
ನೋಲಗಕೆ ಬಹ ಬಣಗು ಸುರರಿಗೆ ಸಮಯವಿಲ್ಲೆಂದ ೩೮

ಏವಗೆ ತವಗೆಂದೀ ಹವಿರ್ಭಾ
ಗವನು ಮುತ್ತಿತು ದೇವತತಿ ಸುರ
ಯುವತಿಯರೊಳೂರ್ವಸಿ ತಿಲೋತ್ತಮೆ ರಂಭೆ ಮೇನಕೆಯು
ದಿವಿಜರೊಳ ಹಸುಗೆಗಳ ಲೆಕ್ಕದ
ಸವಬೆಸನ ಸವಿವಾಯ ತುತ್ತಿನ
ತವಕಿಗರು ಹೊಯ್ದಾಡಿದರು ಸಭೆಯಲಿ ಸುರೇಶ್ವರನ ೩೯

ಈತನಾರೈ ಪಾಂಡುನಂದನ
ನೀತ ಕಾಣಿರೆ ಪಾಂಡುವಿನ ಸುತ
ನೀತನೇ ದಿಟ ಪಾಂಡುವಿನ ಮಗನೀತನೇಯೆನುತ
ಪೂತು ಧರ್ಮಜ ಪೂತು ಧರ್ಮಜ
ಪೂತು ಧರ್ಮಜಯೆನುತ ರಾಜ
ವ್ರಾತ ಹೊಗಳಿತು ನಹುಷ ನಳ ನೃಗ ದಶರಥಾದಿಗಳು ೪೦

ಏನ ಹೇಳುವುದರಸ ಯಜ್ಞ ವಿ
ಧಾನದಭಿಷೇಕಾದಿ ಸಮಯೋ
ದ್ಧಾನವಾಯ್ತರಸಂಗೆ ಸುರ ದುಂದುಭಿಯ ರಭಸದಲಿ
ಆ ನಿರಂತರ ತುಷ್ಟಿಗಳ ವೈ
ಮಾನಿಕರ ಸಂದಣಿ ನವೀನ ವಿ
ತಾನವಾಯಿತು ಭೂರಿ ಭಾರತ ವರುಷದಗಲದಲಿ ೪೧

ವರ ಸದಸ್ಯಾದಿಗಳ ದಕ್ಷಿಣೆ
ಬರಹಕಿಮ್ಮಡಿ ನೂರುಮಡಿ ಸಾ
ವಿರದ ಮಡಿ ವರ ಹೇಮ ವಸ್ತ್ರಾಭರಣ ಗೋವ್ರಜವ
ಅರಸನಿತ್ತನು ಮಖ ನಿಯೋಗೋ
ತ್ಕರರಿಗನುಪಮ ಭೂರಿ ಜನಕಾ
ದರಿಸಿ ಕೊಟ್ಟನು ಹೊತ್ತು ನಡೆದುದು ಸಕಲ ಜನ ಧನವ ೪೨

ತಲೆಹೊರೆಯಲಡಕಿದರು ಹೆಗಲಲಿ
ಕೆಲರು ಶಿಷ್ಯರ ನೆತ್ತಿಯಲಿ ಕೆಲ
ಕೆಲರು ಹೊರಿಸಿತು ದೇಶ ದೇಶದ ಸಕಲ ಭೂಸುರರು
ಲಲಿತ ರತ್ನಾಭರಣ ಗೋ ಸಂ
ಕುಲದ ಸೂರೆಯನೇನನೆಂಬೆನು
ಸಲೆ ದಣಿದುದಾ ಸಕಲ ಜಾತಿ ಜನೇಶ ಯಜ್ಞದಲಿ ೪೩

ಕಳೆದವಗಣಿತ ಕಲ್ಪವಿದರೊಳ
ಗಳಿವನರಿಯದರಿಬ್ಬರೇ ಮುನಿ
ತಿಲಕ ಮಾರ್ಕಂಡೇಯ ರೋಮಶರೀ ಮಹಾಧ್ವರದ
ಸುಳಿವನಾರಲಿ ಕಂಡರವನಿಪ
ರೊಳಗೆನುತ ಮನವುಕ್ಕಿ ನಾರದ
ನೊಲಿದು ನುಡಿದನು ತನ್ನ ಹೇಳಿಕೆ ಸಫಲವಾಯ್ತೆಂದು ೪೪

ಸುರರಿಗಾದುದು ತುಷ್ಟಿ ಧರಣೀ
ಸುರ ಮುನೀಂದ್ರರಿಗಾಯ್ತು ಶೂದ್ರರ
ನೆರವಿಗಾ ಚಂಡಾಲ ಪರಿಯಂತಾಯ್ತು ಸತ್ಕಾರ
ಧರಣಿಪಾಲಕರಿದೆ ಚತುಸ್ಸಾ
ಗರದ ತಡಿ ಪರಿಯಂತ ವಿಶ್ವಂ
ಭರೆಯ ಮಾನ್ಯರ ಮನ್ನಿಸೆಂದನು ಭೂಪತಿಗೆ ಭೀಷ್ಮ ೪೫

ಸ್ನಾತಕ ಪ್ರಿಯ ಋತ್ವಿಗಾಚಾ
ರ್ಯಾತಿಶಯ ಗುರು ನೃಪರು ಸಹಿತೀ
ಭೂತಳದೊಳಿಂತಾರು ಮಾನಿಸರರ್ಘ್ಯಯೋಗ್ಯರಲೆ
ಪ್ರೀತಿಯಲಿ ನೀನರ್ಘ್ಯವನು ವಿ
ಖ್ಯಾತರಿಗೆ ಮಾಡೆನಲು ಮನ್ನಣೆ
ಯಾತನಾರೆನೆ ವೀರನಾರಾಯಣನ ತೋರಿಸಿದ ೪೬

ಎಂಟನೆಯ ಸಂಧಿ

ಸೂ. ರಾಜಸೂಯದೊಳಗ್ರ ಪೂಜಾ
ರಾಜಿತನ ಶ್ರುತಿ ಮೌಳಿ ಮಣಿಯ ವಿ
ರಾಜಿತನ ಶಿಶುಪಾಲ ಜರೆದನು ಪೂರ್ವವೈರದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಮುನಿಮಧ್ಯದಲಿ ನಿಮ್ಮ ನೃ
ಪಾಲ ಭೀಷ್ಮಂಗೆಂದನತಿ ಗಂಭೀರ ನಾದದಲಿ
ಭಾಳ ನೇತ್ರಗೆ ಪಡಿಯೆನಿಪ ಭೂ
ಪಾಲರಿದಳೊಗಗ್ರ ಪೂಜ್ಯನ
ಹೇಳೆನಲು ಗಾಂಗೇಯ ನುಡಿದನು ವೇದ ಸನುಮತವ ೧

ಆರು ತಾರಾಗ್ರಹದ ಮಧ್ಯದೊ
ಳಾರು ದಿನಕರನುಳಿಯೆ ಬಳಿಕಾ
ರಾರು ಸುರ ನಿಕರದಲಿ ಸೇವ್ಯರು ಶೂಲಧರನುಳಿಯೆ
ಆರು ನಿರ್ಜರ ನಿವಹದಲಿ ಜಂ
ಭಾರಿಯಲ್ಲದೆ ಮಾನನೀಯರ
ದಾರು ಜಗದಲಿ ಕೃಷ್ಣನಲ್ಲದೆ ಪೂಜ್ಯತಮರೆಂದ ೨

ಗಿರಿಗಳಲಿ ಹೇಮಾದ್ರಿ ಘನಸಾ
ಗರದೊಳಗೆ ದುಗ್ಧಾಬ್ಧಿ ದೇವಾ
ಸುರ ನರೋರಗ ನಿಕರದಲಿ ನಾರಾಯಣನೆ ಮಿಗಿಲು
ಅರಸ ಸಂಶಯವೇಕೆ ಕೃಷ್ಣನ
ಚರಣವನು ತೊಳೆ ರಾಜಸೂಯಾ
ಧ್ವರಕೆ ಪೂಜಾಪಾತ್ರನೀ ಹರಿಯೆಂದನಾ ಭೀಷ್ಮ ೩

ವ್ಯಾಸ ನಾರದ ರೋಮಶಾದಿಗ
ಳೀ ಸಮಸ್ತ ಮುನೀಂದ್ರರಿಗೆ ಯಿಾ
ಕೇಶವನು ಪೂಜಾರುಹನೆಯೆಂದಿವರ ಬೆಸಗೊಳ್ಳೆ
ಲೇಸನಾಡಿದೆ ಭೀಷ್ಮ ಬಳಿಕೀ
ನೀ ಸಮಸ್ತ ಚರಾಚರದೊಳೀ
ವಾಸುದೇವನೆ ಪೂಜ್ಯನೆಂದುದು ಸಕಲ ಮುನಿ ನಿಕರ ೪

ತರಿಸಿದನು ನವ ಹೇಮಮಣಿ ಭಾ
ಸುರದ ಮಂಚದ ಮೇಲೆ ಲಲಿತಾ
ಸ್ತರಣದಡಿಕಿಲುವಾಸುಗಳ ನಿರ್ಮಳ ನಿಕಾರಗಳ
ಮೆರೆದುದೆಳ ಬೆಳುದಿಂಗಳಿನ ಮೋ
ಹರದ ಮಾರೊಡ್ಡೆನಿಸಿ ಭೂಮೀ
ಶ್ವರ ಸಭಾ ಮಧ್ಯದಲಿ ಧರಣೀಪಾಲ ಕೇಳೆಂದ ೫

ವಿನಯದಲಿ ಸಹದೇವ ಕೈಗೊ
ಟ್ಟನುಪಮನ ತಂದನು ಪಿತಾಮಹ
ಜನಕ ಪಾಯವಧಾರು ಗಂಗಾ ಜನಕನವಧಾರು
ದನುಜ ರಿಪುವವಧಾನವವಧಾ
ನೆನುತ ವಿಮಳ ಮಹಾರ್ಘ್ಯ ಸಿಂಹಾ
ಸನಕೆ ಬಿಜಯಂಗೈಸಿದರು ಕುಳ್ಳಿರ್ದನಸುರಾರಿ ೬

ತಂದು ಮಣಿಮಯ ಪಡಿಗದಲಿ ಗೋ
ವಿಂದನಂಘ್ರಿಯ ತೊಳೆದು ಗಂಗೆಯ
ತಂದೆವೀಗಳೆ ತಾವೆನುತ ತಮ್ಮುತ್ತಮಾಂಗದಲಿ
ವಂದಿಸುತ ವೈದಿಕ ಪರಿವಿಡಿ
ಯಿಂದ ಮಧುಪರ್ಕಾದಿ ಪೂಜೆಗ
ಳಿಂದ ಸತ್ಕರಿಸಿದರು ಸಚರಾಚರ ಜಗತ್ಪತಿಯ ೭

ಆಯೆನುತ ಮನವುಕ್ಕಿ ಮುನಿಗಳು
ಘೇಯೆನಲು ನಿರ್ಜರರ ಭೇರಿ ನ
ವಾಯಿಯಲಿ ಮೊಳಗಿದವು ಸುರಿದವು ಮುಗುಳ ತನಿಮಳೆಯು
ರಾಯನಧ್ವರ ಕರ್ಮ ಸತ್ಕೃತ
ವಾಯಿತೀ ಭೂಪತಿ ಕೃತಾರ್ಥನ
ಲಾಯೆನುತ ಸಭೆ ಹೊಗಳಿತಂದು ಸಮುದ್ರ ಘೋಷದಲಿ ೮

ಈ ಮಹಾಧ್ವರ ಕರ್ಮವೇ ಸು
ತ್ರಾಮನವರಿಗೆ ಹವ್ಯ ಸಿದ್ಧಿ ಮ
ಹಾ ಮಹೀಸುರ ಮುನಿ ನಿಕರದೇಕತ್ರ ಸಮ್ಮಿಳಿತ
ಈ ಮಹೇಶರ ಬರವಿದೆಲ್ಲರೊ
ಳೀ ಮುಕುಂದನ ಪೂಜೆಗಿದುವೆ ಸ
ಭಾ ಮನೋಹರವೆಂದು ಮಾರ್ಕಂಡೇಯ ಮುನಿ ನುಡಿದ ೯

ಅವನಿಯಮರರ ಕಳಕಳವ ಪಾಂ
ಡವರ ಸುಮ್ಮಾನವನು ನೃಪ ಕೌ
ರವರ ಮಾತ್ಸರ್ಯೋಪಲಾಲಿತ ಹರುಷ ವಿಭ್ರಮವ
ಅವನಿಪಾಲರು ಕಂಡರೀಯು
ತ್ಸವವ ಕಂಡಿರೆ ನೀವೆನುತ ತ
ಮ್ಮವರೊಳೊಬ್ಬರನೊಬ್ಬರುರೆ ನೋಡಿದರು ಬೆರಗಾಗಿ ೧೦

ಕೆಲರು ಪಾಂಡವ ಮೈತ್ರಿಯಲಿ ಕೆಲ
ಕೆಲರು ಕೃಷ್ಣನ ಬಲುಮೆಯಲಿ ಕೆಲ
ಕೆಲರು ಧೀರತ್ವದಲಿ ಕೆಲರನುಚಿತದ ಭೀತಿಯಲಿ
ಕೆಲರಿದೇಕವಗೆಂದು ಧರಣೀ
ವಳಯದವನಿಪರಿದ್ದರವರೊಳು
ಖಳಶಿರೋಮಣಿ ಮಸಗಿದನು ಭೂಪಾಲ ಕೇಳೆಂದ ೧೧

ಹೊತ್ತಿತೆದೆ ಹೇರಾಳ ತಮದಲಿ
ಕೆತ್ತಿದವು ಮೀಸೆಗಳು ಕಂಗಳು
ಹೊತ್ತವರುಣಚ್ಛವಿಯನುಬ್ಬರಿಸಿದುದು ಗೋನಾಳಿ
ಕೆತ್ತುದರಿವಿನ ಕದ ಕಟಾಕ್ಷಿಸಿ
ಮಿತ್ತು ವೊಲಿದಳು ರೋಷ ಮಿಗೆ ಹೊಗ
ರೆತ್ತಿತೈ ಶಿಶುಪಾಲವೀರನ ವಚನಮಯ ಖಡುಗ ೧೨

ಏನೆಲವೊ ಸಹದೇವ ವಸುಧೆಯ
ಮಾನನಿಧಿಗಳ ಮುಂದೆ ನಂದನ
ಸೂನುವಿಗೆ ಸಿಂಹಾಸನದ ಮೇಲರ್ಘ್ಯ ಸತ್ಕೃತಿಯೆ
ನೀನರಿಯದವ ನಿಮ್ಮ ಯಾಗಕೆ
ಹಾನಿಯಲ್ಲಾ ನಿಮ್ಮ ಹಿರಿಯರಿ
ದೇನ ನೆಗಳಿದರಕಟ ಖೂಳರು ಪಾಂಡುಸುತರೆಂದ ೧೩

ಯದುಗಳಿವದಿರು ಮುನ್ನ ರಾಜ್ಯಾ
ಸ್ಪದದ ಸಿಂಹಾಸನಕೆ ಬಾಹಿರ
ರದರೊಳೀತನ ಖೋಡಿಯನು ಜಗವೆಲ್ಲ ಬಲ್ಲುದಲೆ
ಇದು ಮಹಾಧ್ವರವಿಲ್ಲಿ ನೆರೆದಿ
ದ್ದುದು ಮಹಾ ಕ್ಷತ್ರಿಯರು ಗೋವರ
ಸದೆಗನಿಲ್ಲಿಗೆ ಶ್ರೇಷ್ಠನೇ ಸಹದೇವ ಕೇಳೆಂದ ೧೪

ತ್ರಿದಶರಿಗೆ ಸರಿತೂಕ ಸಾಮ
ರ್ಥ್ಯದಲಿ ಶುದ್ಧ ಶ್ರೌತ ಸನ್ಮಾ
ರ್ಗದಲಿ ಶಿವಶಿವ ರಾಜ ಋಷಿಗಳಲಾ ಮಹೀತಳಕೆ
ಉದಯದಿನನಂದದಲಿ ನೃಪರಿ
ರ್ದುದು ಸತೇಜವ್ರಜರು ಗೋವರ
ಸದೆಗನಿಲ್ಲಿಗೆ ಶಿಷ್ಟನೇ ಸಹದೇವ ಹೇಳೆಂದ ೧೫

ಬಾಲಕನು ಸಹದೇವನೀತನು
ಹೇಳನಿಲ್ಲಿಯ ಹೆಚ್ಚುಕುಂದು ನೃ
ಪಾಲ ನಿನ್ನದು ಧರ್ಮ ತತ್ವ ರಹಸ್ಯ ಸಂಗತಿಯ
ಕೇಳುವೆಗಳವು ಬೇರೆ ಚರಿತದ
ಪಾಳಿ ತಾನದು ಬೇರೆಲಾ ಪಶು
ಪಾಲರೀಯಧ್ವರಕೆ ಪೂಜ್ಯರೆ ಶಿವಶಿವಾಯೆಂದ ೧೬

ತರಳರಿವದಿರು ಪಾಂಡುಸುತರಂ
ತಿರಲಿ ನೀ ಸುಪ್ರೌಢನೆಂದಾ
ದರಿಸಿದೈ ವಸುದೇವ ಸುತನಲಿ ಶಿಷ್ಟಯೋಗ್ಯತೆಯ
ಧರಣಿಪಾಲರ ಮಧ್ಯದಲಿ ಭಾ
ಸ್ಕರನು ಗಡ ತುರು ಪಳ್ಳಿಕಾರರ
ಪುರದ ಭಾಸ್ಕರನೀತನಲ್ಲಾ ಭೀಷ್ಮ ಹೇಳೆಂದ ೧೭

ಶಿವನ ಸರಿ ಮಂಚದಲಿ ಸರಸಿಜ
ಭವನ ಸಮ ಗದ್ದುಗೆಗಳಲಿ ವಾ
ಸವನ ತೊಡೆ ಸೋಂಕಿನಲಿ ಕುಳ್ಳಿಹರೀ ಮಹೀಶ್ವರರು
ಇವರ ಸರಿಸಕೆ ಸಲ್ಲದೀ ಯಾ
ದವನನುದ್ದದಲಿರಿಸಿ ಬಹುಮಾ
ನವನು ಮಾಡಿದೆ ಭೀಷ್ಮ ಯಜ್ಞವನಳಿದೆ ನೀನೆಂದ ೧೮

ಸಕಲ ಶಾಸ್ತ್ರಶ್ರವಣ ವೇದ
ಪ್ರಕರ ಧರ್ಮ ವಿಚಾರ ಪೌರಾ
ಣಿಕ ಕಥಾ ಪ್ರಾಗಲ್ಭ್ಯವಿನಿತರ ಸಾರ ಸಂಗತಿಯ
ಅಕಟ ನೀರಲಿ ನೆರಹಿ ಪಶು ಪಾ
ಲಕನ ಪೂಜಾ ಸಾಧನಾರ್ಥ
ಪ್ರಕಟನಾದೈ ಭೀಷ್ಮ ಮೂರ್ಖಾಧಮನು ನೀನೆಂದ ೧೯

ಹಿರಿಯನೆಂದೀತನಲಿ ಪೂಜಾ
ವರಣವೇ ವಸುದೇವನೀ ಮುರ
ಹರನ ಪಿತನಿದ್ದಂತೆ ವೇಣೀ ದ್ರುಪದ ಭೂಪತಿಯ
ವರಿಸಿ ನೀವಾಚಾರ್ಯನೆಂದಾ
ದರಿಸುವರೆ ರಾಯರಿಗೆ ಅಸ್ತ್ರದ
ಗುರುವಲಾ ದ್ರೋಣಂಗೆ ಪೂಜೆಯ ಮಾಡಿರೇಕೆಂದ ೨೦

ಈತನಿಲ್ಲಿ ಸದಸ್ಯನೇ ವಿ
ಖ್ಯಾತ ವೇದವ್ಯಾಸಋತ್ವಿ
ಗ್ವ್ರಾತನಾಥಂಗಗ್ರ ಪೂಜೆಯನೇಕೆ ಮಾಡಿಸರಿ
ಈತ ನಿಮಗೆ ಪಿತಾಮಹನೆ ಗಂ
ಗಾತನುಜನೈದನೆ ವಿಶೇಷಕೆ
ಗೌತಮನಲಾ ಕೃಪನ ಮನ್ನಿಸಿರೇಕೆ ನೀವೆಂದ ೨೧

ವೀರರಿಗೆ ಕೊಡಬೇಹುದೇ ರಣ
ಧೀರನಶ್ವತ್ಥಾಮನೈದನೆ
ಸಾರನಲ್ಲಾ ಚಾಪಧರರೊಳಗೇಕಲವ್ಯ ನೃಪ
ಪೌರವೇಯರೊಳಧಿಕ ಬಾಹ್ಲಿಕ
ಗಾರು ಸರಿ ಕೊಡಿರೇಕೆ ಕೃಷ್ಣನಿ
ದರೊಳಗಾರೆಂದಗ್ರಪೂಜೆಯ ಕೊಟ್ಟಿರಕಟೆಂದ ೨೨

ನರನ ಸಖನೀ ಕೃಷ್ಣನೆಂದಾ
ದರಿಸುವರೆ ಗಂಧರ್ವ ನಿಮ್ಮಾ
ನರನ ಸಖನಲ್ಲಾ ವಿರೋಧಿಯೆ ಚಿತ್ರರಥ ನಿಮಗೆ
ಅರಸನಲ್ಲಾ ದ್ರುಮನು ವರ ಕಿಂ
ಪುರುಷ ಮಾನ್ಯನು ನಿಮ್ಮ ಯಜ್ಞದೊ
ಳುರುಳುಂಕರಿಗಲ್ಲದೆ ವಿಶಿಷ್ಟರಿಗಿಲ್ಲ ಗತಿಯೆಂದ ೨೩

ಮಾನ್ಯರಿಗೆ ಮನ್ನಣೆಯುಹರೆ ಸಾ
ಮಾನ್ಯನೇ ಭಗದತ್ತ ನಿಮಗೇ
ನನ್ಯನೇ ಸೌಬಲೇಯ ಜಯದ್ರಥನೇಕೆ ಮನ್ನಿಸರಿ
ಶೂನ್ಯ ವಿಭವವೆ ಮಗಧಸೂನು ಸು
ಮಾನ್ಯನಲ್ಲಾ ದಂತವಕ್ರ ವ
ದಾನ್ಯಭಟ್ಟನು ಕೃಷ್ಣನಿಲ್ಲಿಗೆ ಯೋಗ್ಯನಹನೆಂದ ೨೪

ಉರುವ ನೃಪನಲ್ಲಾ ಸುದಕ್ಷಿಣ
ನರಿಯಿರೇ ಮಾಳವನನೀತನ
ಮರೆದಿರೇ ಸಾಲ್ವನನು ಭೀಷ್ಮಕ ರುಗ್ಮ ಭೂಪತಿಯ
ಮೊರೆಯ ಮರೆದಿರೆ ಶಲ್ಯಭೂಪತಿ
ಹೊರಗಲಾ ವರ ರಾಜಸೂಯಕೆ
ಕರುವ ಕಾವವನಲ್ಲದುಳಿದರು ಯೋಗ್ಯರಲ್ಲೆಂದ ೨೫

ಭೂರಿ ಭೂರಿಶ್ರವರು ನಿರ್ಮೊ
ಗಾರ ಹೊಯ್ದರು ಸೋಮದತ್ತ ಮ
ಹೀರಮಣನತಿ ಮಾನ್ಯನಲ್ಲಾ ಅಗ್ರಪೂಜೆಯಲಿ
ಸಾರಧರ್ಮವಿದೆಂದು ಬಂದೆವಿ
ದಾರು ಬಲ್ಲರು ಹಳ್ಳಿಕಾರರ
ನಾರಿಯರ ನೆರೆ ಮಿಂಡನಲ್ಲದೆ ಯೋಗ್ಯನಲ್ಲೆಂದು ೨೬

ಮಿಂದನನುಮಿಂದಾ ಮಹೀಶರು
ಬಂದಿರೈ ಕಾಂಭೋಜ ನೃಪನೈ
ತಂದೆಲಾ ಗಾಂಧಾರ ಶಕುನಿ ಬೃಹದ್ರಥಾದಿಗಳು
ಬಂದರಿಲ್ಲಿಗೆ ಧರ್ಮಸಾಧನ
ವೆಂದು ಬಯಸಿದಿರಿವರ ಯಾಗಕೆ
ನಂದಗೋಪನ ಮಕ್ಕಳಲ್ಲದೆ ಯೋಗ್ಯರಿಲ್ಲೆಂದ ೨೭

ಈ ಋಷಿಗಳೀ ಮಂತ್ರವೀ ಸಂ
ಭಾರವೀ ಪೌರಾಣ ಕಥೆಯಿ
ಭೂರಿಭೋಜನವೀ ಮಹಾ ಗೋ ರತ್ನ ಧನಧಾನ್ಯ
ಸಾರತರ ವೇದೋಕ್ತಮಾರ್ಗ ವಿ
ಚಾರವಿದ್ದುದು ಹೊರಗೆ ಗೋಪೀ
ಜಾರ ಸತ್ಕೃತಿಯೊಳಗೆ ವಿಷವಿದನರಿದುದಿಲ್ಲೆಂದ ೨೮

ಸ್ನಾತಕವ್ರತಿಯಲ್ಲ ಋತ್ವಿಜ
ನೀತನಲ್ಲಾಚಾರ್ಯನಲ್ಲ ಮ
ಹೀತಳಾಧಿಪನಲ್ಲ ಗುರುವಲ್ಲಸುರರಿಪು ನಿಮಗೆ
ಈತನೇ ಪ್ರಿಯನೆಂದು ಕೃಷ್ಣಂ
ಗೋತು ಕೊಡುವರೆ ಬೇರೆ ಕೊಡುವುದು
ಭೂತಳೇಶರ ಮುಂದೆ ಮನ್ನಿಪುದುಚಿತವಲ್ಲೆಂದ ೨೯

ರಾಯ ನಿನಗಾವಿಂದು ದಿಟ ಸಿ
ದ್ಧಾಯವನು ನಾವೆತ್ತವಲ್ಲದೆ
ವಾಯುಜನ ಫಲುಗುಣನ ಬಿಲ್ಲಿನ ಬಲುಮೆಗಂಜಿದೆವೆ
ರಾಯ ಠಕ್ಕಿನ ನಿಧಿಯ ಠೌಳಿಯ
ಮಾಯಕಾರನ ತಂದು ಮನ್ನಿಸಿ
ರಾಯರಭಿಮಾನವ ವಿಭಾಡಿಸಿಕೊಂಡೆ ನೀನೆಂದ ೩೦

ಧರ್ಮಮಯವೀ ಯಜ್ಞ ನೀನೇ
ಧರ್ಮಸುತನೆಂದಿದ್ದೆ ವಿಲ್ಲಿ ವಿ
ಕರ್ಮವಾಯಿತಸೂಯವೇ ಶಿವನಾಣೆ ಜಗವರಿಯೆ
ಧರ್ಮವೇ ಅಪ್ರಾಪ್ತ ಕಾರ್ಯದ
ಕರ್ಮವೀ ನೃಪನಿಕರ ಮೆಚ್ಚಲ
ಧರ್ಮಸುತನೆಂದಾಯ್ತು ನಿನ್ನಭಿಧಾನವಿಂದಿನಲಿ ೩೧

ಆಯಿತಿದು ಜಡ ಧರ್ಮಜನು ಗಾಂ
ಗೇಯ ಜಡನೀ ತಾಗುದಟ್ಟಿನ
ದಾಯುವರಿಯದೆ ನಿನ್ನ ಕರೆದರೆ ಕೃಷ್ಣ ಬೆರತೆಯಲ
ರಾಯ ರತುನದ ನಡುವೆ ನೀನನು
ಗಾಯಕವೊ ನಾಯಕವೊ ಮೇಣುಪ
ನಾಯಕವೊ ನೀನಾವನೆಂದನು ಜರೆದು ಮುರಹರನ ೩೨

ಈ ಋಷಿಗಳೇ ಬಣಗುಂಗಳು ಬಡ
ಹಾರುವರು ದಕ್ಷಿಣೆ ಸುಭೋಜನ
ಪೂರವಾದರೆ ಸಾಕು ಮಾನ್ಯರ ವಾಸಿವಟ್ಟದಲಿ
ಹೋರುವವರಿವರಲ್ಲ ನೆರೆದೀ
ವೀರ ನೃಪರಭಿಮಾನಿಗಳು ನೆರೆ
ಸೈರಿಸಿದರಿದು ನಿನಗೆ ಸದರವೆ ಕೃಷ್ಣ ಹೇಳೆಂದ ೩೩

ಅರಿಯದವರಾದರಿಸಿದರೆ ನೀ
ನರಿಯ ಬೇಡವೆ ನಿನ್ನ ಕುಂದಿನ
ಕೊರತೆಗಳನಾರರಿಯರೀ ಭೂಪಾಲ ಮಧ್ಯದಲಿ
ಕುರುಬರೂರಲಿ ಗಾಜು ಮಾಣಿಕ
ವರಿಯದವರಿಗೆ ಕೃಷ್ಣ ನೀ ಕಡು
ಬೆರತೆಲಾ ನೆರೆ ಮರೆದೆಲಾ ನಿನ್ನಂತರವನೆಂದ ೩೪

ಕುಲದಲಧಿಕರು ರಾಜ್ಯದಲಿ ವೆ
ಗ್ಗಳರು ಭುಜಸತ್ವದಲಿ ಸೇನಾ
ಬಲದಲುತ್ತಮರಿವರ ಭಂಗಿಸಿ ನಿನಗೆ ಮನ್ನಣೆಯೆ
ಕುಲವು ಯದುಕುಲ ರಾಜ್ಯವೇ ಕಡ
ಲೊಳ ಕುರುವ ನಿನ್ನೋಟಗುಳಿತನ
ದಳವ ಮಾಗಧ ಕಾಲ ಯವನರು ಬಲ್ಲರವರೆಂದ ೩೫

ಬೇವಿನಾರವೆಯೊಳಗೆ ಕಳಹಂ
ಸಾವಳಿಗೆ ರಮ್ಯವೆ ಜಪಾಕುಸು
ಮಾವಳಿಗಳಲಿ ಮಧುಕರನ ಮೋಹರಕೆ ಮನ್ನಣೆಯೆ
ಈ ವಿಕಾರದ ಯಜ್ಞದಲಿ ರಾ
ಜಾವಳಿಗೆ ಮನ್ನಣೆಯೆ ಶಿವಶಿವ
ನೀವು ಗೋಪೀಜಾರರಿಲ್ಲಿಗೆ ಶಿಷ್ಟರಹಿರೆಂದ ೩೬

ಜರಡುಮಖವೀ ಮಖಕೆ ಹೋಲುವ
ಧರಣಿಪತಿಯಾ ಮಖಕೆ ಧರಣೀ
ಶ್ವರಗೆ ಪಾಸಟಿ ಭೀಷ್ಮನೀ ಮಖಭೂಪ ಭೀಷ್ಮರಿಗೆ
ಸರಿಸನಾದನು ಕೃಷ್ಣನೀ ಮಖ
ಧರಣಿಪತಿ ಭೀಷ್ಮಂಗೆ ಕೃಷ್ಣಗೆ
ಸರಿಯ ಕಾಣೆನು ನಿಮ್ಮೊಳೊಬ್ಬರಿಗೊಬ್ಬರೆಣೆಯೆಂದ ೩೭

ಸೀಳಿವನ ಹೆಡತಲೆಯೊಳಗೆ ತೆಗೆ
ನಾಲಗೆಯನೆಲೆ ಕಣ್ಣಿಗಳಿರಿದ
ಕೇಳುವರೆ ಪತಿನಿಂದೆಯನು ಪಾತಕಕೆ ಗುರುವಲ್ಲ
ಏಳೆನುತ ಕೃತವರ್ಮ ಸಾಂಬ ನೃ
ಪಾಲ ಮೊದಲಾದಖಿಳ ಯಾದವ
ಜಾಲವೆದ್ದುದು ಬಿಗಿದ ಬಿಲುಗಳ ಸೆಳೆದಡಾಯುಧದಿ ೩೮

ಕದಡಿತಾ ಆಸ್ಥಾನ ಹೋಯೆಂ
ದೊದರಿ ಋಷಿಗಳ ತಾಳಿಗೆಗಳೊಣ
ಗಿದವು ಹಲ್ಲಣಿಸಿದವು ರಥ ಮಾತಂಗ ವಾಜಿಗಳು
ಕೆದರಿತೀಚೆಯ ದೆಸೆ ಸುನೀತನ
ಸದೆದು ತೆಗೆ ಸುಂಟಿಗೆಯನೆನುತಲಿ
ಯದು ನೃಪಾಲರು ಗಜಬಜಿಸಲೆಡೆವೊಕ್ಕನಾ ಭೀಷ್ಮ ೩೯

ನಿಲಿಸಿದನು ಕಳಕಳವನೀ ಯದು
ಬಲವ ತೆಗೆದನು ಮತ್ತೆ ಮೌನದ
ಜಲಧಿಯಾಯ್ತಾಸ್ಥಾನದಿದಿರಲಿ ನಿಂದು ಸಹದೇವ
ಎಲೆ ಸುನೀತ ವೃಥಾ ವಿರೋಧ
ಸ್ಖಲಿತನಾದೆ ಮುರಾರಿ ಮಾನ್ಯರ
ತಿಲಕನೀತನ ಪೂಜೆ ಯಾಗಕೆ ಕಳಸವಾಯ್ತೆಂದ ೪೦

ಧರಣಿಪತಿಯೇ ಸಕಲ ಧರ್ಮದ
ಪರಮಸೀಮೆ ಮುಕುಂದನೇ ಮಾ
ನ್ಯರಿಗೆ ಗುರು ವಂದ್ಯರಿಗೆ ವಂದ್ಯನು ದೈವಕಧಿದೈವ
ಸುರನದೀನಂದನನು ಸಾಕ್ಷಾ
ತ್ಪರಮಶಿವನೀ ಯಜ್ಞ ಲೋಕೋ
ತ್ತರದ ಮಖವಿದು ನಿನ್ನ ಕುಮತಿಗೆ ಸಾಧ್ಯವಲ್ಲೆಂದ ೪೧

ನಿನ್ನನೆನ್ನನು ಚೈದ್ಯ ಕೃಷ್ಣನ
ಮನ್ನಣೆಗೆ ಸೆಣಸುವರಿಗಿದೆ ತೊಡ
ರೆನ್ನ ಪಾದದಲೆನುತ ಧರಣಿಯ ನೊದೆದನಂಘ್ರಿಯಲಿ
ಇನ್ನು ನೀನು ಸುಲೋಚನಾಂಧಕ
ನಿನ್ನೊಡನೆ ಫಲವೇನು ಕದನಕೆ
ಬನ್ನಿ ಮಿಡುಕುಳ್ಳವರೆನುತ ಗಜರಿದನು ಸಹದೇವ ೪೨

ನುಡಿಯದದು ಮೌನಗ್ರಹದ ಹೆಡ
ಗುಡಿಯಲಿದ್ದುದು ರಾಯ ಕುಲವವ
ಗಡೆಯನೆದ್ದನು ಸಿಂಹ ಪೀಠದಿ ನೋಡಿ ಕೆಲಬಲನ
ಕಡೆಯ ಝಣಝಣ ರವ ಮಸಗಲಿವ
ನೊಡನೆ ಹೊರವಂಟುದು ನೃಪಾಲಕ
ರೊಡಮುರುಚಿದರು ಹಿಡಿವ ಸಚಿವ ಪಸಾಯ್ತ ಮಂತ್ರಿಗಳ ೪೩

ಶಿವಶಿವಾ ತಪ್ಪಾಯ್ತು ನಮ್ಮು
ತ್ಸವಕೆ ಬಂದವನಿಪನ ಗುಣ ದೋ
ಷವನು ನಾವೀಕ್ಷಿಸುವುದನುಚಿತವೆಂದು ವಿನಯದಲಿ
ಅವನಿಪತಿ ಬೆಂಬತ್ತಿ ಗಮನಕೆ
ತವಕಿಸುವ ಶಿಶುಪಾಲಕನ ಹಿಡಿ
ದವುಚಿದನು ಮಧುರೋಕ್ತಿಯಲಿ ನುಡಿಸಿದನು ಬೋಳೈಸಿ ೪೪

ಅರಿಯರೇ ಮುನಿ ಮುಖ್ಯರೀತನ
ನುರುವ ದೈವವಿದೆಂದು ನೀ ಕ
ಟ್ಟರಿತಗಾರನೆ ರಾಯರಿದೆಲಾ ಸಕಲ ಗುಣಯುತರು
ಕುರುಬತನದಲಿ ನೀನಕಟ ತೆರ
ನರಿಯದೆಂಬರೆ ಬಾರೆನುತ ಮುಂ
ಜೆರಗ ಹಿಡಿದೆಳೆದವನ ತಂದನು ಭೂಪ ಜನ ಸಹಿತ ೪೫

ಎಲೆ ಮರುಳೆ ಭೂಪಾಲ ನೊರಜಿನ
ಕಳಕಳಕೆ ಕರಿ ಬೆಚ್ಚುವುದೆ ಮಂ
ಡಳಿಯ ಮರಿ ಮಿಡುಕಿದರೆ ಕಳವಳಿಸುವುದೆ ಕಲಿ ಸಿಂಹ
ಗಿಳಿಯ ಮುರಕಕೆ ಗಿಡಗನುಗಿದ
ವ್ವಳಿಸುವುದೆ ಹರಿಗಿವನು ಗಣ್ಯನೆ
ಗಳಹನಿವನೊಡನಾವುದನುಸಿಯುವೆಂದನಾ ಭೀಷ್ಮ ೪೬

ಗರುವ ಗರುವನನಖಿಳ ವಿದ್ಯಾ
ಪರಿಣತನ ಪರಿಣತನು ವೀರನು
ಧುರದ ವೀರನನರಿವನಿಂತಿದು ಲೋಕ ವಿಖ್ಯಾತ
ಗರುವನಲ್ಲ ಸುನೀತ ವಿದ್ಯಾ
ಪರಿಣತನು ತಾನಲ್ಲ ಘನಸಂ
ಗರದೊಳಿವನಾಳಲ್ಲ ಕೃಷ್ಣನನರಿವನೆಂತೆಂದ ೪೭

ಅರಸನರಸನು ಕಾದಿ ಹಿಡಿದಾ
ದರಿಸಿ ಬಿಟ್ಟು ತದೀಯ ರಾಜ್ಯದೊ
ಳಿರಿಸಿದರೆ ಗುರುವಾತನಾತಂಗಿದುವೆ ಶ್ರುತಿಸಿದ್ಧ
ಅರಸುಗಳನನಿಬರನು ಸೋಲಿಸಿ
ಮರಳಿ ರಾಜ್ಯದೊಳಿರಿಸನೇ ಮುರ
ಹರನು ಗುರುವಲ್ಲಾ ಮಹೀಶಂಗೆಂದನಾ ಭೀಷ್ಮ ೪೮

ಮಗಧಸುತನೀ ಸಾಲ್ವ ಹಂಸನ
ಮಗ ನಿಶುಂಭನ ಸೂನು ನರಕನ
ಮಗನು ಪೌಂಡ್ರಕ ದಂತವಕ್ರನ ತನುಜರಿವರೆಲ್ಲ
ಹಗೆಯ ಮಾಡಿ ಮುರಾಂತಕನ ಕಾ
ಳಗದೊಳೆಲ್ಲರನಿಕ್ಕಿ ಪಟ್ಟವ
ಬಿಗಿಸಿಕೊಂಡವರಲ್ಲವೇ ಹೇಳೆಂದನಾ ಭೀಷ್ಮ ೪೯

ಜ್ಞಾನವೃದ್ಧರು ವಿಪ್ರರಲಿ ಸ
ನ್ಮಾನನೀಯರು ಶೌರ್ಯವೃದ್ಧರು
ಮಾನವೇಂದ್ರರೊಳಧಿಕವಿದು ಪೌರಾಣ ಸಿದ್ಧವಲೆ
ಜ್ಞಾನವೃದ್ಧನು ಕೃಷ್ಣನಾಹವ
ದೀನನೆ ಘನ ಶೌರ್ಯನೆಂಬುದ
ತಾನರಿಯನೇ ಚೈದ್ಯ ಭೂಪತಿಯೆಂದನಾ ಭೀಷ್ಮ ೫೦

ಏನ ಹೇಳ್ವುದು ಧರ್ಮತತ್ವ ನಿ
ಧಾನದಲಿ ಮುನಿ ಮುಖ್ಯರಿಪರ
ಜ್ಞಾನಿಗಳು ಶಿಶುಪಾಲ ತತ್ವಜ್ಞಾನ ಪಂಡಿತನು
ಆ ನಿಶಾಟರು ಮೆಚ್ಚರಗ್ಗದ
ಭಾನುರಶ್ಮಿಯನಂಧಕಾರ
ಜ್ಞಾನನಿಷ್ಠರು ನಿಪುಣರೈಸಲೆಯೆಂದನಾ ಭೀಷ್ಮ ೫೧

ಈತ ಸಚರಾಚರದ ಗುರು ವಿ
ಖ್ಯಾತ ಋತ್ವಿಜನೀತನಾಚಾ
ರ್ಯಾತಿಶಯನೀತನು ಮಹಾಪ್ರಿಯನೀತ ನೃಪನೀತ
ಸ್ನಾತಕವ್ರತಿಯೀತನೀತನ
ಮಾತು ನಿನಗೆತ್ತಣದು ನವಖ
ದ್ಯೋತಕೆತ್ತಣ ಸೂರ್ಯ ಮಂಡಲವೆಂದನಾ ಭೀಷ್ಮ ೫೨

ಕರುಣೆಸೈ ಗಾಂಗೇಯ ಕೃಷ್ಣನ
ಚರಿತವನು ಶಿಶುಪಾಲ ಭೂಪನ
ಕರಣವೃತ್ತಿಯು ಕದಡು ತಿಳಿಯಲಿ ದೈವ ದೂರನಲೆ
ದುರುಳನಿವನ ದುರುಕ್ತಿಗಳ ಕೇ
ಳ್ದರಿಗೆ ಪ್ರಾಯಶ್ಚಿತ್ತವಿದು ವಿ
ಸ್ತರಿಸ ಬೇಹುದು ಸಕಲ ಜನಮತವೆಂದನಾ ಭೂಪ ೫೩

ಕೇಳು ಧರ್ಮಜ ಸಕಲ ಋಷಿಗಳು
ಕೇಳಿರೈ ನೆರೆದವನಿಪಾಲರು
ಕೇಳಿರೈ ನೆರೆದಖಿಳ ಜನ ಚಿತ್ತಾವಧಾನದಲಿ
ಶ್ರೀಲತಾಂಗಿಯ ವಲ್ಲಭನ ಸ್ತುತಿ
ಮೌಳಿಮೌಕ್ತಿಕಪಾದಪೀಠನ
ಲೀಲೆಯನು ಚಿತ್ತವಿಸಿ ಗದುಗಿನ ವೀರನರಯಣನ ೫೪

ಒಂಬತ್ತನೆಯ ಸಂಧಿ

ಸೂ. ದೇವ ದೇವನನುಪನಿಷತ್ಕಾಂ
ತಾವಳಿಯ ಕಮನೀಯನನು ರಾ
ಜೀವಪೀಠನ ಪಿತನನಭಿವರ್ಣಿಸಿದನಾ ಭೀಷ್ಮ

ಕೇಳು ಜನಮೇಜಯ ಧರಿತ್ರೀ
ಪಾಲ ವಿರಚಿತ ಪದಯುಗ ಪ್ರ
ಕ್ಷಾಳನಾಚಮನೀಯ ತತ್ಪರಿಶುದ್ಧಭಾವದಲಿ
ಆ ಲಲಿತ ತಲ್ಪದ ಯಶೋದಾ
ಬಾಲಕಂಗಭಿನಮಿಸಿ ನಿಮಿಷ ನಿ
ಮೀಲಿತಾಕ್ಷನು ಕಂದೆರೆದು ಮುನಿಜನಕೆ ಕೈಮುಗಿದು ೧

ವರ ಋಷಿಗಳಾಜ್ಞೆಯಲಿ ವಿಶ್ವಂ
ಭರನ ವಿಷಯೀಕರಿಸಿ ರಾಜಾ
ಧ್ವರ ಸಮರ್ಥನ ಭವ ವಿನಾಶನ ಸುಪ್ರಯೋಜಕನ
ಅರಿವ ತೆರದಿಂದೆನ್ನ ಮತಿ ಗೋ
ಚರಿಸಿದುದ ಹೇಳುವೆನು ಕೃಷ್ಣನ
ಪರಮ ಲೀಲಾ ಲಲಿತ ಚರಿತವನೆಂದನಾ ಭೀಷ್ಮ ೨

ಘನ ರಜೋಗುಣದಲ್ಲಿ ಚತುರಾ
ನನ ತಮೋಗುಣದಲ್ಲಿ ಶಂಕರ
ನೆನಿಸಿ ಸತ್ವಗುಣಾನುಗತಿಯಲಿ ವಿಷ್ಣುವೆಂದೆನಿಸಿ
ಘನಜಗನ್ಮಯನಾಗಿ ಸರ್ವಾ
ತ್ಮನು ಮಹೇಶ್ವರನೆನಿಪನೀತನ
ನೆನಹನೀತನ ನಿಜವನರಿವ ಮಹಾತ್ಮರಾರೆಂದ ೩

ಈತನವ್ಯಕ್ತನು ವಿಚಾರಿಸ
ಲೀತನಮಲವ್ಯಕ್ತಲಿಂಗನ
ಜಾತನವ್ಯಯನಪ್ರಮೇಯನಗಮ್ಯನದ್ವಿತಯ
ಈತ ಚೈತನ್ಯಾತ್ಮ ನಿರ್ಗುಣ
ನೀತ ಗುಣ ಸಂಯೋಗಿ ಸರ್ವಗ
ನೀತ ಚಿನ್ಮಯನೀತನಾ ಹರಿಯೆಂದನಾ ಭೀಷ್ಮ ೪

ಜಲನಿಧಿಯ ಬುದ್ಬುದ ತರಂಗಾ
ವಳಿಗಳಾ ಜಲಧಿಯಲಿ ತೋರುವ
ವಳಿವವೀ ವೈಕುಂಠ ವಿಮಲಜ್ಞಾನ ಜಲಧಿಯಲಿ
ಹೊಳೆವುದಳಿವುದು ವಿಶ್ವವೀತನ
ಸುಳಿವು ತೋರುವದಿಲ್ಲ ಮಾಯಾ
ಲಲನೆಯಿಕ್ಕಿದ ಮದ್ದು ಜೀವರಿಗೆಂದನಾ ಭೀಷ್ಮ ೫

ಭೂತ ಜನನಸ್ಥಿತಿಗೆ ಕಾರಣ
ನೀತನೀತಂಗಿಲ್ಲ ಕಾರಣ
ನೀತ ಜಾಗ್ರತ್ ಸ್ವಪ್ನ ಸುಪ್ತಿಗಳೆಂಬವಸ್ಥೆಗಳ
ಆ ತುರಿಯ ನಾತುರಿಯ ತುರಿಯಾ
ತೀತ ಲಕ್ಷಣ ನಿತ್ಯನಿರ್ಮಳ
ನೀತನಮಳವ್ಯಕ್ತಿ ಚಿನ್ಮಯನೆಂದನಾ ಭೀಷ್ಮ ೬

ಭ್ರಾಮಕದೊಳೀ ವಿಷಯ ಸೌಖ್ಯದ
ರಾಮಣೀಯಕದೊಳಗೆ ಮುಳುಗಿ ನಿ
ರಾಮಯನು ಪರತತ್ವಮಯನಚ್ಯುತನು ತಾನಾದ
ಈ ಮುಕುಂದನ ಮರೆದು ಕರ್ಮ ವಿ
ರಾಮದಲಿ ಕುದಿದವರು ಮಾಯಾ
ಕಾಮಿನಿಯ ಕೈ ಮುಸಕದಲಿ ಮರುಳಾಗದಿರರೆಂದ ೭

ಇರದೆ ತಿಲದಲಿ ತೈಲ ಕಾಷ್ಠದೊ
ಳಿರವ ತಹರೇ ಹುತವಹನನೇ
ನರಿಯಬಾರದೆ ವಿಷ್ಣು ಚೈತನ್ಯಾತ್ಮನೆಂಬುದನು
ಹೊರಗೊಳಗೆ ಸಂಸ್ಥೂಲ ಸೂಕ್ಷ್ಮೇ
ತ್ಕರದೊಳಗೆ ಹರಿಯುಳಿಯೆ ವಿಶ್ವವ
ಹೊರೆವ ಹೊಂದಿಪರುಂಟೆ ಹೊರಬಿಗರೆಂದನಾ ಭೀಷ್ಮ ೮

ಹೂಹೆಗಳು ಹೊಯ್ದಾಡವೇ ನಿ
ರ್ವಾಹ ಸೂತ್ರದ ಕುಣಿಕೆಗಾರನ
ಗಾಹಿನಲಿ ತಜ್ಜಗದಜೀವದ ಸುಕೃತ ದುಷ್ಕೃತವ
ಓಹರಿಕೆಯಲಿ ತಂದು ಭವದಲಿ
ಸೋಹಿಸುಳಿಸುವನೀ ಚರಾಚರ
ಜೋಹಪಿದು ನಿಜಲೀಲೆಯಿಾ ಹರಿಗೆಂದನಾ ಭೀಷ್ಮ ೯

ಈತನಚ್ಯುತನಲ್ಲೆನಿಸಿ ವಿಪ
ರೀತ ಮಿಥ್ಯಾಜ್ಞಾನ ತೋರಿದ
ಡೀತನಲಿ ತಪ್ಪೇನು ನಿಜ ಪರಮಾತ್ಮನೆನಿಸಿದರೆ
ಭೀತನೊಬ್ಬನು ಕನಸಿನಲಿ ತ
ನ್ನಾ ತಲೆಯ ತಾನರಿದು ಓಡಿದುದ
ನೀತರಿಂದಲಿ ಕಂಡನೈ ಶಿಶುಪಾಲ ಕೇಳೆಂದ ೧೦

ಭ್ರಮೆಯು ಭುಜಗನೆ ರಜ್ಜುವೊ ಜಂ
ಗಮವೊ ಕಲ್ಪಿತ ಪುರುಷನಾತ್ಮನೊ
ವಿಮಲ ಸಂವಿದ್ರೂಪನಾತ್ಮನೊ ಜೀವ ಪರಮನಲಿ
ಕಮಲನಾಭನೆ ನಿಜವೊ ವಿಶ್ವ
ಭ್ರಮವೆ ನಿಜವೊ ಚೈದ್ಯ ಭೂಪತಿ
ಕುಮತಿ ಕಪಿಗೇಕಮಲ ಮಾಣಿಕವೆಂದನಾ ಭೀಷ್ಮ ೧೧

ತೋರುವೀ ಮಹದಾದಿ ಭೂತದೊ
ಳೋರು ಗುಡಿಸದೆ ನಿಂದ ಮುವ್ವ
ತ್ತಾರು ತತ್ವದೊಳೀತನೇ ಮಣಿಗಣದ ಗುಣದಂತೆ
ತೋರುವೀ ತೋರಿಕೆಯ ತುಷವನು
ತೂರಿದರೆ ಮೇಣ್ ವಿಶ್ವಮುಖದಲಿ
ತೋರಿ ತೋರದೆ ಮೆರೆವನೀ ಹರಿಯೆಂದನಾ ಭೀಷ್ಮ ೧೨

ಸ್ವೇದಜಾಂಡೋದ್ಭಿಜ ಜರಾಯುಜ
ಭೇದವಾದ ಚತುರ್ವಿಧದ ಭೂ
ತೋದರನ ತದ್ರೂಪಮಯ ತದ್ಭೂತ ಭಾವನನ
ವಾದಗೊಳ್ಳದ ಬಹಳ ವಸ್ತುವ
ನೀ ದುರಾತ್ಮಕನೆತ್ತ ಬಲ್ಲನು
ಬೀದಿಯಲಿ ಬಿದ್ದವನು ಬೊಮ್ಮವಿದೆಂದನಾ ಭೀಷ್ಮ ೧೩

ನೆಳಲು ಜಲದಲಿ ನಡುಗಲಿನ ಮಂ
ಡಲಕೆ ಕಂಪವೆ ಧೂಮಶಿಖಿ ಕು
ಪ್ಪಳಿಸಿದರೆ ಕಂದುವದೆ ನಭ ಕೆಂಧೂಳಿಯೊಪೆಮುರಿದು
ಸುಳಿದರನಿಲನ ತೊಳೆವರೇ ನರ
ರೊಳಗೆ ನರ ರೂಪದಲಿ ಜನಿಸಿದ
ರೊಳಗು ಡಿಳ್ಳವೆ ಪರಮ ಸುಖನಿಧಿಗೆಂದನಾ ಭೀಷ್ಮ ೧೪

ಗುಣಮಯದ ಗರುವಾಯಿಯಲಿ ಝೇ
ವಣಿಗೆಗೊಂಬನು ಭೂತದಿಂದ್ರಿಯ
ಗಣದೊಡನೆ ನಿಜ ಪೌರುಷದಲೊದಗಿದ ಪವಾಡಿಗಳ
ಗುಣವ ಝಾಡಿಸಿದರೆ ಸಮಷ್ಟಿಯ
ಹಣಿತದಲಿ ಮುರಿದಿದಿರನಗಲಕೆ
ಕುಣಿವ ಚೌಪಟ ಬೊಮ್ಮ ಗಜವಿದನರಿವರಾರೆಂದ ೧೫

ಕೊಲೆಯ ಕವತೆಯ ಕನಸಿನಲಿ ಕಳ
ವಳಿಸಿದರೆ ದಿಟವೇ ಮನೋರಥ
ಫಲವನನುಭವಿಸಿದರೆಯನುಭವ ಸಿದ್ಧವೇ ತನಗೆ
ಹೊಳೆವ ಜಗದಲಿ ಹೊಳೆದು ತನ್ನೊಳ
ಗಳಿದು ತಾನಾಗುಳಿದು ಬೊಮ್ಮಕೆ
ಹಳಿವು ಹೊರುವುದೆ ನಿತ್ಯಶುದ್ಧನೊಳೆಂದನಾ ಭೀಷ್ಮ ೧೬

ನೋಟ ಸುತ್ತಲು ಬೇಹುದೇ ಹರಿ
ದಾಟವಗಲಕೆ ಬಳಕೆಯಲಿ ಮಾ
ತಾಟ ಸುಳಿವಿನೊಳಗ್ಗಳದ ಓಡಿಬಂಧಿ ಹರಪಿನಲಿ
ಪೇಟದಲಿ ಮೂಪಣ್ಣ ದಾಬೆಯು
ಕೂಟದಲಿ ಕುರುಹಾಗಿ ಮಿಗೆ ನಿ
ಲೋರ್ಟಿಸುವ ನಿಜ ದಿಟ್ಟ ಬೊಮ್ಮವಿದೆಂದನಾ ಭೀಷ್ಮ ೧೭

ಭೂತ ಭವ್ಯ ಭವತ್ಪ್ರಧಾನ
ಖ್ಯಾತ ತತ್ವಪ್ರಕೃತಿ ಪೂರುಷ
ನೀತ ಸಚ್ಚಿನ್ಮಾತ್ರನೀತನು ಪರಶಿವಾತ್ಮಕನು
ಸೋತ ನುಡಿ ಮನದೊಡನೆ ಮರಳಿದ
ಡಾತ ಸತ್ಯಜ್ಞಾನಮಯ ನಿ
ರ್ಧೂತ ಮಾಯಾತೀತನೀ ಹರಿಯೆಂದನಾ ಭೀಷ್ಮ ೧೮

ಯಜ್ಞದಧಿಪತಿಯಿತನೀತನು
ಯಜ್ಞಪುರುಷನು ಸ್ರುಕ್ ಸ್ರುವಾದೀ
ಯಜ್ಞ ಸಾಧನನೀತನೀತನು ಮಂತ್ರ ಕಾಲಾತ್ಮ
ಯಜ್ಞವೀತನು ಕರ್ಮವೀತನು
ಯಜ್ಞದಲಿ ಯಜಮಾನನೀತನು
ಯಜ್ಞಫಲವೀ ದೇವಕೀ ಸುತನೆಂದ್ರನಾ ಭೀಷ್ಮ ೧೯

ದೆಸೆ ಪರಿಚ್ಛೇದಿಸದ ನುಡಿ ಹವ
ಣಿಸದ ಕಲ್ಪ ಸಹಸ್ರ ಕೋಟಿಯೊ
ಳಸಮಸೆಯ ಮಾಡದ ಮಹತ್ವದೊಳುರು ಮಹತ್ವದಲಿ
ಎಸೆವನಣುವಿಂಗಣುವೆನಿಸಿ ನಿ
ರ್ಮಿಸಿ ವಿಭಾಡಿಸಿ ಬರವಳಿದು ಹೆ
ಚ್ಚಿಸಿ ಮುರಿದನೀ ಜಗವನೀ ಹರಿಯೆಂದನಾ ಭೀಷ್ಮ ೨೦

ಒಂದೆನಿಸಿ ತೋರುವನು ಎರಡರೊ
ಳೊಂದಿ ಮೆರೆವನು ಮೂರು ನೆಲೆಯಲಿ
ನಿಂದು ನಾಲ್ಕನು ಬಳಸಿ ವಿಭುವಾಗೈದು ಠಾಣದಲಿ
ಹಿಂದೆ ಮುಂದೆಡಬಲದ ಬಹು ವಿಧ
ದಿಂದ ಮಾಯಾ ಗುಪ್ತನಾಗಿ ಮು
ಕುಂದ ತೋರುವನೀತನಂತೆಯನರಿವರಾರೆಂದ ೨೧

ದ್ವಿಜರು ಮುಖದಲಿ ಭೂಪರೀತನ
ಭುಜದಲಾದರು ನಿಖಿಳ ವೈಶ್ಯ
ವ್ರಜ ಘನೋರುಗಳಿಂದ ಶೂದ್ರರು ಪಾದಪದ್ಮದಲಿ
ದ್ವಿಜಪತಿಸ್ವಾಂತದಲಿ ವರವಾ
ರಿಜಸಖನು ಕಣ್ಣಿನಲಿ ವದನಾಂ
ಬುಜಲಿಂದ್ರಾದಿಗಳು ಜನಿಸಿದರೆಂದನಾ ಭೀಷ್ಮ ೨೨

ಗಗನವೀತನ ನಾಭಿ ದಶದಿ
ಕ್ಕುಗಳು ಕಿವಿ ಫಣಿಲೋಕ ವಿಮಳಾಂ
ಘ್ರಿಗಳು ಧ್ರುವನಿಂ ಮೇಲು ಭಾಗ ಮುರಾಂತಕನ ಮುಕುಟ
ಗಗನ ಮಣಿ ಶಂಕರ ವಿರಿಂಚಾ
ದಿಗಳು ದೇವನ ರೋಮ ಕೂಪದೊ
ಳಗಣಿತಾಮರ ನಿಕರವಿಹುದಿದನರಿವರಾರೆಂದ ೨೩

ಪ್ರಳಯದಲಿ ಧರೆ ಕರಗುವುದು ಜಲ
ದೊಳಗೆ ತಜ್ಜಲವಡಗುವುದು ಶಿಖಿ
ಯೊಳಗೆ ತತ್ಪಾವಕನು ಪವನನೊಳಾತನಭ್ರದಲಿ
ಬಳಿಕ ಹಂಸತ್ವದಲಿ ಗಗನವೆ
ನಿಲುಗು ಹಮ್ಮು ಮಹತ್ವದಲಿ ಮಹ
ದಳಿವು ಮಾಯೆಯೊಳಾಕೆಯಡಗುವಳೀತನಂಘ್ರಿಯಲಿ ೨೪

ಧರಣಿ ತಾನೈವತ್ತು ಕೋಟಿಯು
ಹರಹು ಭೂಮಿಂಗೆ ಹತ್ತು ಮಡಿ ಖ
ರ್ಪರ ಕಟಾಹವದಕ್ಕೆ ದಶಗುಣ ದಶ ಗುಣೋತ್ತರದ
ಪರಿವಿಡಿಯಲುದಕಾಗ್ನಿ ರವಿ ಪು
ಷ್ಕರದ ಹಮ್ಮು ಮಹತ್ವ ಸಪ್ತಾ
ವರಣವೀ ಬ್ರಹ್ಮಾಂಡವೀತನ ರೋಮ ರೋಮದಲಿ ೨೫

ದೇವರಂಗೋಪಾಂಗದಲಿ ವೇ
ದಾವಳಿಗಳುಚ್ಛ್ವಾಸದಲಿ ತೀ
ರ್ಥಾವಳಿಗಳಂಘ್ರಿ ದ್ವಯಾಂಬುಜ ಮಾಕರಂದದಲಿ
ಪಾವಕಕೆ ಪಾವನನು ಜೀವರ
ಜೀವನನು ಮೃತ್ಯುವಿಗೆ ಮೃತ್ಯುವಿ
ದಾವ ಲೆಕ್ಕದೊಳೀತನಹನೆಂದರಿವರಾರೆಂದ ೨೬

ವಿಶ್ವಶಿಲ್ಪದ ಕುಶಲ ಹಸ್ತನು
ವಿಶ್ವರಕ್ಷೆಯ ಮಂತ್ರವಾದಿಯು
ವಿಶ್ವ ಸಮಿಧೆಗಳಗ್ನಿ ಕಾರ್ಯದ ಬ್ರಹ್ಮಚಾರಿ ವಟು
ವಿಶ್ವನಾಟಕ ಸೂತ್ರಧಾರನು
ವಿಶ್ವ ವಿಸ್ಮಯದೈಂದ್ರ ಜಾಲಕ
ವಿಶ್ವದಂತಸ್ಸ್ಯೂತ ಚೇತನನೀತ ನೋಡೆಂದ ೨೭

ಇರಲಿರಲು ಕಲ್ಪಾವಸಾನಕೆ
ಬಿರಿದುದೀ ಬ್ರಹ್ಮಾಂಡ ಬಹಿರಾ
ವರಣ ಜಲವೀ ಜಲದೊಳೊಂದಾಯ್ತೇಕ ರೂಪಾಗಿ
ಹರಿ ವಿನೋದದಲೊಬ್ಬನೇ ಸಂ
ಚರಿಸುತಿದ್ದನು ಬಳಿಕ ಕಾಲಾಂ
ತರದೊಳಗೆ ಮಧು ಕೈಟಭರು ಜನಿಸಿದರು ಕರ್ಣದಲಿ ೨೮

ಲೀಲೆಯಲಿ ಬಳಿಕವದಿರೊಡನೆ ವಿ
ತಾಳಿಸಿತು ಮನ ಕಾದಿದರು ಬಲು
ಕಾಳಗವನವರಿತ್ತ ವರದಲಿ ಹಿಡಿದು ದಾನವರ
ಸೀಳಿ ಬಿಸುಟನು ಖಳರ ಮೇದ
ಸ್ಸಾಳಿ ಮುಳುಗಿತು ಜಲದೊಳದರಿಂ
ಮೇಲುವೆಸರಾಯ್ತಿಳೆಗೆ ಮೇದಿನಿಯೆಂಬ ನಾಮದಲಿ ೨೯

ಆ ಮಧುವನಾ ಕೈಟಭನ ಮುರಿ
ದೀ ಮಹಾತ್ಮಕನೊಡನೆ ವಾದಿಸು
ವೀ ಮರುಳನೇನೆಂಬೆನೈ ಶಿಶುಪಾಲ ಬಾಲಕನ
ಕಾಮರಿಪು ಕಲ್ಪಾಂತ ವಹ್ನಿ
ವ್ಯೋಮರೂಪನುದಾರ ಸಗುಣ ಸ
ನಾಮ ಚಿನ್ಮಯನೀತನೀತನನರಿವರಾರೆಂದ ೩೦

ಶ್ರುತಿ ಪುರಾಣ ಸಮಸ್ತ ಶಾಸ್ತ್ರ
ಸ್ಮೃತಿ ವಿಭಾಗಾರ್ಥಕೆ ವಸಿಷ್ಠನ
ಸುತ ಸುತನಲೀ ವಿಮಲ ವೇದವ್ಯಾಸ ನಾಮದಲಿ
ವ್ರತಿಜನೋತ್ತಮನುದಿಸಿದನು ಯದು
ಪತಿ ಕಣಾ ತಾನೀತನೀ ದು
ರ್ಮತಿಗೆ ಗಮ್ಯವೆ ಗರುವ ದ್ವೈಪದ ಗಾಢಗತಿಯೆಂದ ೩೧

ಮನುವರಿವನಜ ಬಲ್ಲನೀಶ್ವರ
ನೆನೆವ ನಾರದ ಮುನಿಪ ವರ್ಣಿಪ
ಮನದಿ ಸನಕ ಸನತ್ಸುಜಾತಾದ್ಯರಿಗಿದೇ ವ್ಯಸನ
ಮುನಿಗಳಿಗೆ ಮುಕ್ತರಿಗೆ ಕರ್ಮದ
ಕಣೆಗಳಿಗೆ ಕೋವಿದರಿಗಿದೆ ಜೀ
ವನವಿದೇ ಗತಿ ಪರಮ ವೈಷ್ಣವ ತತ್ವವಿದೆಯೆಂದ ೩೨

ವೇದಕೀಸುಬ್ಬಸ ವಿರಿಂಚ ಸು
ರಾದಿಗಳು ಕಿಗ್ಗಡಲಲಿರೆ ಸನ
ಕಾದಿ ಮುನಿಗಳು ತಡಿಯಲಿದ್ದರು ತೆರೆಯ ಹೊಯ್ಲಿನಲಿ
ವಾದಿಗಳ ದುಸ್ತರ್ಕ ನಸಿದುದು
ನಾದದಲಿ ದುಸ್ವರ ಮುರಾರಿ ಮ
ಹೋದಧಿಯನೀ ಬಣಗು ದಾನವ ಭಂಗಿಸುವನೆಂದ ೩೩

ಅಕಟ ನಿರ್ಗುಣ ತತ್ವವಿದೆ ನಾ
ಟಕದ ಬಹುರೂಪಿನಲಿ ವಿಶ್ವಾ
ತ್ಮಕ ಪರಾನಂದೈಕರಸವಿದೆ ಮನೆಯ ಕೇರಿಯಲಿ
ಪ್ರಕಟ ಮಾಯಾ ಗುಪ್ತ ಪರಮಾ
ತ್ಮಕ ಮಹಾನಿಧಿ ಸಭೆಯೊಳಿರುತಿರೆ
ವಿಕಳ ಮತಿಗಳು ವೀಚುಗೆಡುವರು ಶಿವ ಶಿವಾಯೆಂದ ೩೪

ನಿರವಯವ ತತ್ವೈಕ ರಸವಿದೆ
ನರ ಮನೋಹರ ರೂಪಿನಲಿ ವ್ಯವ
ಹರಣ ಸಂಜ್ಞಾರಹಿತವಿದೆ ಕೃಷ್ಣಾಭಿಧಾನದಲಿ
ಭರಿತ ಬಹಳ ಬ್ರಹ್ಮವಿಲ್ಲಿಯೆ
ಧರಣಿಯಲಿ ಸಂಚರಿಸುತಿದೆ ಮುರ
ಹರನ ತತ್ವರಹಸ್ಯ ಮುದ್ರೆಯನರಿವರಾರೆಂದ ೩೫

ಏಕೆ ಕನ್ನಡಿ ಕುರುಡರಿಗೆ ತಾ
ನೇಕೆ ಸಾಳಗ ಶುದ್ಧ ಬಧಿರರಿ
ಗೇಕೆ ಮೂರ್ಖ ಸಮಾಜದಲಿ ಸಾಹಿತ್ಯ ಸನ್ನಾಹ
ಏಕೆ ಖಳರಿಗೆ ನಯ ವಿಧಾನ
ವ್ಯಾಕರಣ ಪಾಂಡಿತ್ಯ ಫಡ ಲೋ
ಕೈಕ ಪಾತಕನೆಂದು ನುಡಿದನು ಜರೆದು ದಾನವನ ೩೬

ಹೊಗಳಿ ದಣಿಯವು ವೇದತತಿ ಕೈ
ಮುಗಿದು ದಣಿಯರು ಕಮಲಭವ ಭವ
ರೊಗುಮಿಗೆಯ ಮಾನಸ ಸಮಾಧಿಯ ಸಾರ ಸತ್ವದಲಿ
ಬಗೆದು ದಣಿಯರು ಯೋಗಿಗಳು ಕೈ
ಮುಗುಚಿ ದಣಿಯರು ಕರ್ಮಿಗಳು ಮೂ
ಜಗದ ದೈವದ ದೈವ ಕೃಷ್ಣನ ಬೈವನಿವನೆಂದ ೩೭

ಈತ ಕಾಣಿರೆ ಘನ ಚರಾಚರ
ಚೇತನತ್ವದಿ ವಿಹಿತ ಬೀಜ
ವ್ರಾತವನು ತುಂಬಿದನು ಪಡಗಿನೊಳೌಕಿ ಬಾಲ್ಯದಲಿ
ಆತ ತಮನೆಂಬಸುರರನನು ಕರ
ಘಾತಿಯಿಂದವಪೆ ಕೆಡಹಿ ವೇದವ
ನೀತ ತಂದನು ಮತ್ಸ್ಯರೂಪಿನೊಳೆಂದನಾ ಭೀಷ್ಮ ೩೮

ಖೂಳ ನಾಯ್ಗಳು ಬಲ್ಲರೇ ಶಿಶು
ಪಾಲಕಾದಿ ದೊಠಾರರೀ ಗೋ
ಪಾಲ ಕಾಣಿರೆ ಕೂರ್ಮವೇಷವ ಧರಿಸಿ ಮೇದಿನಿಯ
ಸಾಲ ಹೆಡೆಯಲಿ ಹೊತ್ತ ಪನ್ನಗ
ಪಾಲಕನನಾ ಮಂದರದ ಕಡ
ಗೋಲನಾಂತ ಮಹಾತ್ಮನೀತನನರಿವರಾರೆಂದ ೩೯

ಇವನ ಪಾಡೇ ಮುನ್ನ ಕೃತಯುಗ
ದವರೊಳಧಿಕ ಹಿರಣ್ಯಲೋಚನ
ನವನಿಯನು ಕೊಂಡೋಡಿ ಹೊಕ್ಕನು ಘನ ರಸಾತಳವ
ಅವನ ಬೆಂಬತ್ತಿದನು ಯಜ್ಞ
ಪ್ರವರ ದೇಹನು ವೇದಮಯ ನಿ
ರ್ಭವ ವಿಮೋಹನ ಘನ ವರಾಹನೆ ಕೃಷ್ಣ ತಾನೆಂದ ೪೦

ತೂಳಿದನು ದಂಡೆಯಲಿ ದೈತ್ಯನ
ಸೀಳಿದನು ದಿಕ್ಕರಿ ಫಣೀಂದ್ರರ
ಮೇಲೆ ಧರಣಿಯ ನಿಲಿಸಿದನು ಸಂತವಿಸಿದನು ಜಗವ
ಹೇಳಲಜ ರುದ್ರಾಮರೇಂದ್ರರ
ತಾಳಿಗೆಗಳೊಣಗಿದವು ಭಂಗಿ ಛ
ಡಾಳಿಸಿತಲಾ ಚೈದ್ಯ ಭೂಪತಿಗೆಂದನಾ ಭೀಷ್ಮ ೪೧

ಆ ಹಿರಣ್ಯಾಕ್ಷನ ಸಹೋದರ
ನೀ ಹರಿಯನವಗಡಿಸಿ ದೈವ
ದ್ರೋಹಿ ಬಹುವಿಧ ವ್ಯಥೆಗಳಲಿ ಬೇಸರಿಸಿದನು ಮಗನ
ಆಹವದಲಚ್ಯುತ ಮುಕುಂದ ಮ
ಹಾಹಿತಲ್ಪ ಮಹೇಂದ್ರ ವಂದ್ಯ
ತ್ರಾಹಿಯೆಂದನವರತ ತುತಿಸಿದನಂದು ಪ್ರಹ್ಲಾದ ೪೨

ಕಾದುದೀತನ ನಾಮವಾ ಪ್ರ
ಹ್ಲಾದನಾಸರು ಬೇಸರನು ಬಳಿ
ಕೀ ದಯಾಂಬುಧಿ ದನುಜಪತಿ ದಿಟ್ಟಿಸಿದ ಕಂಬದಲಿ
ಆದುದಾವಿರ್ಭಾವ ಸಿಡಿಲಿನ
ಸೋದರರದ ಕಣ್ಣುಗಳ ಭಾಳದ
ಬೀದಿಗಿಚ್ಚಿನ ರೌದ್ರದಲಿ ನರಸಿಂಹ ರೂಪಾಗಿ ೪೩

ಉಗುರೊಳಸುರನ ಕರುಳ ದಂಡೆಯ
ನುಗಿದು ಕೊರಳಲಿ ಹಾಯ್ಕಿ ದೈತ್ಯನ
ಮಗನ ಪತಿಕರಿಸಿದನು ತತ್ಕ್ರೋಧಾಗ್ನಿ ಪಲ್ಲವಿಸಿ
ಭುಗಿ ಭುಗಿಲ್ ಭುಗಿಲೆಂದು ಕಬ್ಬೊಗೆ
ನೆಗೆಯಲುರಿ ಹೊಡೆದೆವಬುಜಜಾಂಡದ
ಬಗರಗೆಯ ಭೇದಿಸಿತು ಈತನ ಕೆಣಕಬೇಡೆಂದ ೪೪

ತ್ರೇತೆಯಲಿ ಬಲಿರಾಜ್ಯ ಭುವನ
ಖ್ಯಾತವಾಯ್ತು ತದಶ್ವಮೇಧದೊ
ಳೀತ ವಾಮನನಾಗಿ ಯಾಚಿಸಿದನು ಪದತ್ರಯವ
ಭೂತಳವನಲ್ಲಿಂದ ಬಳಿಕ
ಪ್ರೀತಿಯಲಿ ಕಮಲಜ ಕಟಾಹೋ
ದ್ಧೂತ ಚರಣದೊಳಳೆಯಲಾದುದು ಧರಣಿ ಪದಯುಗಕೆ ೪೫

ನೆರೆಯದೀ ನೆಲ ನೆಗಹಿದಂಘ್ರಿಗೆ
ಮುರಿದುದಬುಜ ಭವಾಂಡ ಖರ್ಪರ
ದೊರತೆ ಬಹಿರಾವರಣ ಜಲ ಗಂಗಾಭಿಧಾನದಲಿ
ಎರಗಿತೀ ಗೋವಿಂದನಾರೆಂ
ದರಿಯೆಲಾ ಹರಿಯೊಡನೆ ಜಂಬುಕ
ನೊರಲಿದರೆ ನಾನೇನ ಹೇಳುವೆನೆಂದನಾ ಭೀಷ್ಮ ೪೬

ರಾಯ ಕೇಳೈ ವಿಮಲ ದತ್ತಾ
ತ್ರೇಯವೆಸರಲಿ ಧರ್ಮವನು ಪೂ
ರಾಯದಲಿ ಪಲ್ಲವಿಸಿದನು ಹೈಹಯನ ರಾಜ್ಯದಲಿ
ಬಾಯಿಬಡಿಕರು ಬಗುಳಿದರೆ ಹರಿ
ಯಾಯತಿಕೆ ಪಾಸಟಿಯೆ ನಿಗಮದ
ಬಾಯ ಬೀಯಗವೀ ಮುಕುಂದನನರಿವರಾರೆಂದ ೪೭

ಮಿಡುಕಿದರೆ ರಾವಣನ ಸೆರೆಯಲಿ
ಕೆಡಹಿದನಲಾ ಕಾರ್ತವೀರ್ಯನ
ಕಡುಹನಾನುವ ದಿಟ್ಟರುಂಟೇ ದೇವ ದೈತ್ಯರಲಿ
ತೊಡಕಿದರೆ ಬಳಿಕಾ ನೃಪನ ತೋ
ಳಡವಿಗಡಿದು ಮಹೀಶ ವಂಶವ
ತಡೆಗಡಿದನೀ ಕೊಡಲಿಕಾರನ ತೋಟಿ ಬೇಡೆಂದ ೪೮

ಖರನ ತ್ರಿಶಿರನ ದೂಷಣಾದ್ಯರ
ಶಿರವ ಚೆಂಡಾಡಿದನು ಘನ ಸಾ
ಗರವ ಕಟ್ಟಿದ ಕಟ್ಟಿಯಿದೆಲಾ ಕಾಣದೇ ಲೋಕ
ಹರಿಬವೋ ಮೇಣ್ ಪೌರುಷವೊ ಮ
ತ್ಸರವೊ ಮೇಣ್ ಮಾರಾಂಕವೋ ಹುಲು
ಮೊರಡಿ ಸೆಣಸುವುದೇ ಸುರಾದ್ರಿಯೊಳೆಂದನಾ ಭೀಷ್ಮ ೪೯

ಆವುದಂತರವಿವಗೆ ಹಿಂದಣ
ರಾವಣನೊಳವಗಡಿಸಿಯಾತನ
ಮಾವನನು ಮುರಿದವನ ತಂಗಿಯ ಮೂಗ ಭಂಗಿಸಿದ
ದೇವ ದಲ್ಲಣನಿಂದ್ರವಿಜಯು ಸು
ರಾವಳಿಯ ದೆಸೆಪಟರೆನಿಪ ದೈ
ತ್ಯಾವಳಿಯ ಕಡಿ ಖಂಡದೊಟ್ಟಿಲ ರಾಮ ನೋಡೆಂದ ೫೦

ಹರ ಗಿರಿಯನೊಡಯೆತ್ತಿದುಬ್ಬಟೆ
ಯರಸಲಾ ದಶವದನನಾತನ
ಶಿರದುಪಾರವನಿಟ್ಟು ದಣಿಸನೆ ದೆಸೆಯ ದೇವಿಯರ
ಬರಡನಿವನೀ ದೈವದೊಡನು
ಬ್ಬರಿಸಿದೊಡೆಯೀ ಇಬ್ಬರಭ್ಯಂ
ತರವನಿವರರಿಯರೆ ಮುನೀಂದ್ರರು ಶಿವ ಶಿವಾಯೆಂದ ೫೧

ಹಿಂದೆ ಕೃತಯುಗ ಸಮಯದಲಿ ಸುರ
ವೃಂದದೊಡನಸುರರಿಗೆ ಕೊಂಡೆಯ
ದಿಂದ ಮಸೆಮಸೆದಂಕವಾಯಿತು ಖಳನ ಕಾಳಗಕೆ
ಬಂದುದಾ ತೆತ್ತೀಸ ಕೋಟಿಗ
ಳೊಂದು ದೆಸೆ ಜಂಭಾದಿ ದಾನವ
ರೊಂದು ದೆಸೆ ಹೊಯ್ದಾಡಿತೇನೆಂಬೆನು ಮಹಾದ್ಭುತವ ೫೨

ಅವರೊಳಗ್ಗದ ಕಾಲನೇಮಿ
ಪ್ರವರನಮರ ವಿಭಾಡ ವರ ದಾ
ನವ ಶಿರೋಮಣಿ ದಿವಿಜ ನಾಯಕ ಶರಭಭೇರುಂಡ
ಬವರದಲಿ ಶಕ್ರಾಗ್ನಿ ಯಮ ಶಶಿ
ರವಿ ಕುಬೇರ ಸಮೀರಣಾದ್ಯರ
ಸವರಿ ಸಪ್ತಾಂಗವನು ಕೊಂಡನು ಮೇಘ ವಾಹನನ ೫೩

ರಣದೊಳೋಡಿದ ಸುರನಿಕರ ಘ
ಲ್ಲಣೆಯನಿಕ್ಕಿತು ಹರಿಗೆ ಕರೆ ಹ
ಲ್ಲಣಿಸು ಗರುಡನನೆಂದು ಹೊರವಂಟನು ಮುರಧ್ವಂಸಿ
ಕೆಣಕಿದನು ದಾನವನನಾಗಳೆ
ಹಣಿದವನ ಹೊಯ್ದು ಮುಳ ಚಕ್ರದ
ಗೊಣೆಯದಲಿ ಮೆರಸಿದನು ತಲೆಯನು ದಿವಿಜ ನಗರಿಯಲಿ ೫೪

ಆ ಮಹಾಸುರ ಕಾಲನೇಮಿ ಸ
ನಾಮನೀ ಕಾಲದಲಿ ಯಾದವ
ಭೂಮಿಯಲಿ ಜನಿಸಿದನಲೇ ಕಂಸಾಭಿಧಾನದಲಿ
ಈ ಮರುಳು ಹವಣೇ ತದೀಯ
ಸ್ತೋಮ ಧೇನುಕ ಕೇಶಿ ವತ್ಸ ತೃ
ಣಾಮಯರು ಹಲರಿಹರು ದುಷ್ಪರಿವಾರ ಕಂಸನಲಿ ೫೫

ಸೇದಿದನು ಪೂತನಿಯಸುವಸವ
ನಾದರಿಸಿ ಮೊಲೆವಾಲನೂಡಿಸೆ
ಪಾದತಳ ಸೋಂಕಿಸಲಿ ತೊಟ್ಟಿಲ ಬಂಡಿ ನುಗ್ಗಾಯ್ತು
ಸೇದಿ ಕಟ್ಟಿದ್ದೊರಳನೆಳೆದರೆ
ಬೀದಿಯಲಿ ಮರ ಮುರಿದುದೀ ಕರು
ಗಾದವನ ಕೈಯಿಂದ ಮಡಿದುದು ಕಂಸ ಪರಿವಾರ ೫೬

ಕೇಶಿ ಧೇನುಕ ವತ್ಸ ಲಂಬ ಬ
ಕಾಸುರನು ತೃಣವರ್ತನಘನೆಂ
ಬಾ ಸಮರ್ಥರ ಸೀಳಿ ಬಿಸುಟನು ಬಾಲಕೇಳಿಯಲಿ
ಗಾಸಿಯಾದುದು ದಂತಿ ಮಲ್ಲರ
ದೇಸು ಘನ ಮಾವನನು ಮರ್ದಿಸಿ
ಮೀಸಲಳಿಯದ ದಿವಿಜ ಕನ್ನೆಯರೊಡನೆ ಜೋಡಿಸಿದ ೫೭

ಇವನ ಹವಣೇ ತ್ರಿಪುರಹತ ದಾ
ನವರು ಕುಂಭ ನಿಕುಂಭವೆಸರಿಂ
ದವನಿಯಲಿ ಜನಿಸಿದರು ನಭದಲಿ ರಚಿಸಿದರು ಪುರವ
ಅವದಿರುರೆಯಾಳಿದರು ನಿರ್ಜರ
ನಿವಹವನು ಬಳಿಕವರನೊಂದೇ
ಬವರದಲಿ ಕೆಡಹಿದನು ಕೃಷ್ಣನನರಿವರಾರೆಂದ ೫೮

ಮುರನ ನರಕನ ಹಂಸ ಡಿಬಿಕರ
ವರ ಸೃಗಾಲನ ದಂತವಕ್ರನ
ದುರುಳ ಪೌಂಡ್ರಕ ಪಂಚಜನ ಶುಂಭನ ನಿಶುಂಭಕನ
ಅರಿ ಹಯಗ್ರೀವಕನ ಸಾಲ್ವನ
ನೊರಸಿದನಲಾ ನಿನ್ನ ಪಾಡನ
ದುರುಳರೇ ದೈತ್ಯೇಂದ್ರರೀತನ ಕೆಣಕಿದವರೆಂದ ೫೯

ತೋಳು ಸಾವಿರವಮರಪತಿ ತೆರು
ವಾಳಿನೊಕ್ಕಲು ಕಂತುಕದ ವೈ
ಹಾಳಿ ಪಾತಾಳದಲಿ ಸಪ್ತದ್ವೀಪ ಮನೆ ತನಗೆ
ಶೂಲಿ ಬಾಗಿಲ ಕಾಯ್ವನೀಸು ಚ
ಡಾಳಿಸಿದ ಸಿರಿಯಾರಿಗಾತನ
ತೋಳಡವಿಯನು ನಿನ್ನೆ ತರಿದನು ಕೃಷ್ಣ ನೋಡೆಂದ ೬೦

ಆ ಯುಗದಲಾ ಯುಗದಲನಿಬರು
ಬೀಯವಾದರು ದೈತ್ಯ ದಾನವ
ರೀ ಯುಗದಲೆನಿತಸುರರನಿಬರು ದುಷ್ಟ ದಾನವರು
ರಾಯರನಿಬರು ದಿವಿಜ ರಾಯನ
ಲಾಯದಲಿ ಲಂಬಿಸಿದರಾ ತರು
ವಾಯ ನಿನಗೀಗಳೆ ವಿಘಾತದೊಳೆಂದನಾ ಭೀಷ್ಮ ೬೧

ಇಂಗಿತದಲರಿವುದು ಮಹಾತ್ಮರಿ
ಗಂಗವಿದು ಮಧ್ಯಮರು ಕರ್ಣ ಪ
ಥಂಗಳಲಿ ಗೋಚರಿಸಲರಿವುದು ಲೋಕ ವೃತ್ತಿಯಿದು
ಕಂಗಳಲಿ ಕಂಡರಿವರಧಮರು
ಕಂಗಳಲಿ ಕಿವಿಗಳಲಿ ಮೇಣ್ ಹರಿ
ಯಿಂಗಿತವನರಿಯದ ಜಡಾತ್ಮನು ಚೈದ್ಯ ನೃಪನೆಂದ ೬೨

ಎಲೆ ಪಿತಾಮಹ ನೀವು ನಿಗಮ
ಸ್ಥಳ ರಹಸ್ಯವನುಪನಿಷತ್ಸಂ
ಕುಳ ವಚೋಭಿಪ್ರಾಯ ಪೀಯೂಷವನು ಬೀರಿದರೆ
ಖಳರಿಗತಿ ದರ್ಪಜ್ವರ ಪ್ರ
ಜ್ವಲಿತರಿಗೆ ಸೊಗಸುವುದೆ ಬೆಳದಿಂ
ಗಳು ವಿಯೋಗಿಗೆ ವಿಷಮುವೆಂದನು ನಗುತ ಸಹದೇವ ೬೩

ಕೇಳಿರೈ ನೆರೆದಖಿಳ ಧರಣೀ
ಪಾಲರಿಗೆ ಕೈ ಮುಗಿದೆವೀ ಗೋ
ಪಾಲನೆಮ್ಮಾಚಾರ್ಯನೆಮ್ಮಯ ತಂದೆ ಗುರುವೆಮಗೆ
ಲಾಲಿಸಿದೆವರ್ಚಿಸಿದೆವೀತನ
ಮೇಲೆ ಮುಳಿಸುಂಟಾದೊಡೆನ್ನೊಡ
ನೇಳಲಾತನ ಗಂಡನೆಂದೊದೆದನು ಮಹೀತಳವ ೬೪

ಚೆಲ್ಲಿದವು ಸಹದೇವ ಶಿರದಲಿ
ಮಲ್ಲಿಗೆಯ ಮೊಗ್ಗೆಗಳ ಮಳೆ ನಭ
ದಲ್ಲಿ ದನಿಯಾಯ್ತುಹುದಲೇ ಸಹದೇವ ಲೇಸೆನುತ
ಘುಲ್ಲವಿಸಿದರು ಋಷಿಗಳಪ್ರತಿ
ಮಲ್ಲದೈವದ ನೆಲೆಯನರಿಯದ
ಖುಲ್ಲ ಭೂಪರು ಮಸಗಿದರು ಗುಜುಗುಜಿನ ಗಾಢದಲಿ ೬೫

ಹತ್ತನೆಯ ಸಂಧಿ

ಸೂ. ಅಗ್ರಪೂಜಾವ್ಯಾಜಮುಖದಲಿ
ವಿಗ್ರಹದ ಶಿಶುಪಾಲಶಿರ ಗಗ
ನಾಗ್ರದಲಿ ಕುಣಿದಾಡಲೆಸೆದನು ವೀರ ನಾರಯಣ

ಕೇಳು ಜನಮೇಜಯ ಧರಿತ್ರೀ
ಪಾಲ ಸಹದೇವನ ವಚೋಗ್ರ
ವ್ಯಾಳ ವಿಷವೆಡೆಯಲ್ಲಿ ಸಿಲುಕಿತು ಮನ ಮಹೀಶ್ವರರ
ಸೂಳು ನೆನಹಿನ ಸುಳಿಮನದ ಸಮು
ಪಾಳಿ ಕೋಪದಲಳಿದ ಮೌನದ
ಮೇಲು ಬುದ್ಧಿಯ ಜೋಡಿ ಬೇರೊಂದಾಯ್ತು ಭಾವದಲಿ ೧

ಕಿವಿವಳೆಯ ಮೋರೆಗಳ ಮುಷ್ಟಿಯ
ಬವರಿಗಳ ಕಡೆಗಣ್ಣ ಸನ್ನೆಯ
ಸವಡಿಗೈಗಳ ನಂಬುಗೆಯ ಮನಮನದ ಬೆಸುಗೆಗಳ
ಅವಸರದ ಮೈತ್ರಿಗಳ ಮಂತ್ರಿ
ಪ್ರವರ ವಚನೋಪೇಕ್ಷೆಗಳ ರಣ
ದವಕದಲಿ ಕಳವಳಿಸುತಿರ್ದುದು ಕೂಡೆ ನೃಪಕಟಕ ೨

ಪರಿಣತರ ನುಡಿಗಳನು ಕಿವಿಯೋ
ಕರಿಸಿದವು ದುರದುಂಬಿಗಳ ಬಾ
ಹಿರರ ನುಡಿಗಳನಡಿಗಡಿಗೆ ಕುಡಿದು ತೇಗಿದವು
ಕರೆಸಿದರು ಖೂಳರನು ನೀತಿಯ
ಗರುವರನು ನೂಕಿದರು ರಾಯನ
ಪರಮ ಯಾಗವನಳಿಯಲನುವಾಯಿತ್ತು ನೃಪಕಟಕ ೩

ನೀವು ಪರಿಯಂತೇಕೆ ನಿಮ್ಮವ
ರಾವಲೇ ನಿಮ್ಮಾಳು ಕುದುರೆಗೆ
ನಾವಲೇ ದಳಪತಿಗಳಿವದಿರ ಯಜ್ಞಮಂಟಪವ
ಆವ ಬೇಗದಲುರುಹುವೆನು ಚಿ
ತ್ತಾವಧಾನವ ಮಾಡಿಯೆಂದು ನೃ
ಪಾವಳಿಯ ಶಿಶುಪಾಲ ಸಂತೈಸಿದನು ಸಾಮದಲಿ ೪

ಧರಣಿಪರ ಸನ್ನೆಯಲಿ ಬಲ ಸಂ
ವರಿಸಿತಾಚೆಯಲಿತ್ತ ಸಾತ್ಯಕಿ
ನರ ವೃಕೋದರ ನಕುಲ ಧೃಷ್ಟದ್ಯುಮ್ನ ಮೊದಲಾದ
ಕರಿತುರಗ ರಥಪತ್ತಿಗಳ ಸಂ
ವರಣೆ ತಳಿತುದ ಕಂಡು ಮೂಗಿನ
ಬೆರಳ ಬೆರಗಿನಲೊಲೆದು ಭೀಷ್ಮಂಗೆಂದನಾ ಭೂಪ ೫

ಈಸು ಪೌರುಷ ದೈವ ಘಟನೆಯೊ
ಳೀಸು ಪರಿಯಂತಾಯ್ತು ಯಜ್ಞದ
ಮಿಾಸಲಳಿಯದೆ ನಡೆದುದಿನ್ನೆಗ ನಿಮ್ಮ ಕರುಣದಲಿ
ಈ ಸಮಸ್ತ ನೃಪಾಲಜನ ಪಾ
ರಾಸಿ ಮೇರೆಯನೊದೆವುತಿದೆ ನಿಮ
ಗೇಸು ಭಾರವಿದೆಂದು ಬಿನ್ನವಿಸಿದನು ಭೀಷ್ಮಂಗೆ ೬

ಕಾದುವರೆ ನಮ್ಮುತ್ಸವಕೆ ನೆರ
ವಾದವರು ಸೈರಿಸುವರಗ್ಗದ
ಯಾದವೇಂದ್ರನ ನಿಂದೆ ಮೇಲಧ್ವರ ವಿಸಂಘಟನ
ಈ ದುರಂತದಚಿಂತೆಯಲಿ ಬೇ
ಳಾದುದೆನ್ನಯ ಚಿತ್ತವದ್ದೆನು
ಖೇದ ಪಂಕದೊಳೆನ್ನನುದ್ಧರಿಸೆಂದನಾ ಭೂಪ ೭

ಅಂಜದಿರು ಭಯ ಬೇಡ ನರರಿಗೆ
ನಂಜು ಪಥ್ಯವೆ ಗಿಳಿಯ ಮರಿಗಳು
ಮಂಜರನ ಮೇಲ್ವಾಯ್ದು ಬದುಕುವವೇ ಮಹೀಪತಿಯೆ
ಮಂಜು ಮಧ್ಯಾಹ್ನದ ದಿನೇಶನ
ನೆಂಜಲಿಸುವುದೆ ಕುಪಿತ ಸಿಂಹವ
ನಂಜಿಸುವವೇ ನಾಯ್ಗಳೆಂದನು ಭೂಪತಿಗೆ ಭೀಷ್ಮ ೮

ಬಗುಳುವಿವದಿರು ಹರಿಯ ಬಡಿ ಹೋ
ರಿಗಳಲಾ ಜಗವರಿಯದೇ ಜ
ಳ್ಳುಗಳ ಜೋಡಿಯ ಜಂಜಡಕೆ ನೀ ಜರುಗುವೈ ಭೂಪ
ಉಗಿವನಿನಿಬರ ಜೀವವನು ಜೊ
ತ್ತಗೆಯಲೀ ಶಿಶುಪಾಲ ನಾಯನು
ತೆಗೆದು ಕಟ್ಟುವನಸುರಮರ್ದನನೆಂದನಾ ಭೀಷ್ಮ ೯

ಜಗವ ಹೂಡುವ ಹೊರೆವ ಬಲುಗೈ
ಯುಗಧರಂಗೀ ನೃಪರ ಕುರಿವಿಂ
ಡುಗಳ ಕುಮ್ಮರಿಗಡಿತಕಾವುದು ಬೇಕು ಭುಜಸತ್ವ
ಬಗೆವುದೇ ಬಲುಗಡಲು ಮಂಜಿನ
ಮುಗಿಲವಳೆಯುನು ಚೈದ್ಯ ಭೂಪನ
ಜಗದ ಭಂಡನನೀ ಜನಾರ್ದನ ಗಣಿಸುವನೆಯೆಂದ ೧೦

ಎಲೆ ನಪುಂಸಕ ಭೀಷ್ಮ ಸುಡು ಬೈ
ಗುಳಿನ ಭಂಡನು ನೀನಲಾ ಗೋ
ಕುಲದ ಗರ್ವನ ಗುಣವ ಕಂಡಿತುಗೊಂಡೆ ಬೇಸರದೆ
ಹಳಿವಿನಲಿ ಹೆಮ್ಮೆಯನು ಕುಂದಿನ
ಕುಲದೊಳಗ್ಗಳಿಕೆಯನು ತಮದಲಿ
ಬೆಳಗ ಬಣ್ಣಿಸುತಿಹೆ ನಿರಂತರವೆಂದನಾ ಚೈದ್ಯ ೧೧

ಅವಗುಣದಲುದ್ಭಾವಿಸುವೆ ಗುಣ
ನಿವಹವನು ರಾಜಾಧಮರು ಯಾ
ದವರು ಪೂಜಾರುಹರೆ ಸುಡು ಸುಡು ನಿನ್ನ ನಾಲಗೆಯ
ಸವಿನುಡಿಯ ದುರ್ವ್ಯಸನಿ ತೊಂಡಿನ
ತವರುಮನೆ ಬಾಹಿರರಿಗಾಶ್ರಯ
ಭವನ ಖಳರಧಿದೈವ ಭೀಷ್ಮನ ಕೊಲುವರಿಲ್ಲೆಂದ ೧೨

ಇವನು ಗಡ ಚಿಕ್ಕಂದು ಮೊಲೆಗೊ
ಟ್ಟವಳ ಹಿಂಡಿದ ಗಂಡ ಬಂಡಿಯ
ಜವಳಿಗಾಲಲಿ ಮುರಿದನೈ ಮಾಮಾ ಸಮರ್ಥನಲೆ
ಸವಡಿ ಮರ ನೆಗ್ಗಿದವು ಗಡ ಮೈ
ಯವುಚಿದರೆ ಬಲುಗತ್ತೆ ಗೂಳಿಯ
ನಿವ ವಿಭಾಡಿಸಿದನೆ ಮಹಾದ್ಭುತವೆಂದನಾ ಚೈದ್ಯ ೧೩

ಹಕ್ಕಿ ಹರಿಣಿಯ ತರಿದ ಗಡ ಕೈ
ಯಿಕ್ಕಿದರೆ ಕಡುಗುದುರೆಯನು ನೆಲ
ಕಿಕ್ಕಿದನೆ ನೆರೆ ಹೇಳು ಹೇಳಾ ಕೃಷ್ಣನಾಳ್ತನವ
ಹೊಕ್ಕು ಹೆಬ್ಬಾವಿನ ಬಸುರ ಸೀ
ಳಿಕ್ಕಿದನೆ ಯಾದವನ ಪೌರುಷ
ವಕ್ಕಜವಲಾ ಭೀಷ್ಮ ತೂಪಿರಿಯೆಂದನಾ ಚೈದ್ಯ ೧೪

ಗಾಳಿಯನು ಘಲ್ಲಿಸಿದ ಕರುವಿನ
ಕಾಲ ಹಿಡಿದೊಗೆದನುಗಡುರಗನ
ಮೇಲೆ ಕುಣಿದಾಡಿದನು ಗಡ ಹಾವಡಿಗ ವಿದ್ಯೆಯಲಿ
ಖೂಳ ಗೋವರ ಹಳ್ಳಿಯಲಿ ಕ
ಟ್ವಾಳಲಾ ಬಳಿಕೇನು ಪೃಥ್ವೀ
ಪಾಲರೀತಗೆ ಸರಿಯೆ ದಿಟ ದಿಟವೆಂದನಾ ಚೈದ್ಯ ೧೫

ಏಳು ದಿನ ಪರಿಯಂತ ಪೊರಡಿಯ
ಮೇಲುಗೊಡೆಯನು ಹಿಡಿದು ಬಲು ಮಳೆ
ಗಾಲವನು ಮಾಣಿಸಿದ ಗಡ ಹರಹರ ವಿಶೇಷವಲ
ಹೇಳು ಹೇಳಿಂದ್ರಂಗೆ ಮಾಡಿದ
ಕೂಳ ರಾಶಿಯನೊಬ್ಬನೇ ಕೈ
ಮೇಳವಿಸಿದನೆ ಕಂದನಾಣೆ ವಿಚಿತ್ರವಾಯ್ತೆಂದ ೧೬

ಅಸಗನನು ಕೆಡೆ ತಿವಿದು ಕಂಸನ
ವಸನವೆಲ್ಲವ ಸೆಳೆದ ಗಡ ಮಾ
ಣಿಸಿದನೈ ದಿಟ ಘಟ್ಟವಾಳ್ತಿಯ ಮೈಯ ಮೂಹೊರಡ
ಮಸಗಿ ಬೀಸುವ ಕಂಸನಾನೆಯ
ನಸು ಬಡಿದ ಗಡ ಮಲ್ಲರನು ಮ
ರ್ದಿಸಿದನೇ ಡೊಳ್ಳಾಸದಲಿ ಡಾವರಿಗನಹನೆಂದ ೧೭

ಆದರಿವನನು ತುತಿಸುವೊಡೆ ಮೇ
ಲಾದ ಕಷ್ಟವನೇನ ಹೇಳುವೆ
ನೀ ದುರಾತ್ಮಕ ಸಾಕಿದೊಡೆಯನನಿರಿದ ಸಬಳವಲೆ
ಸೋದರಿಯಲಾ ಕೃಷ್ಣನವ್ವೆ ವಿ
ವಾದವೇ ಸಾಕಿದನಲಾ ಕೈ
ಗಾದನೇ ಕಂಸಂಗೆ ಮುನಿವುದಿದಾವ ಘನವೆಂದ ೧೮

ಆದರಿಸಿ ಬಣ್ಣಿಸಿದೆ ನಾಚದೆ
ಯಾದವನ ಕೌಳಿಕ ಪರಾಕ್ರಮ
ವಾದಿಯಾದ ಸಮಸ್ತ ಗುಣ ವಿಸ್ತಾರ ವೈಭವವ
ಆದರಾ ಗೋವಳರ ಹೆಂಡಿರ
ಹಾದರದ ಹೆಕ್ಕಳವ ಬಣ್ಣಿಸ
ದಾದೆ ನಿನಗೇಕಕಟ ನಾಚಿಕೆಯೆಂದನಾ ಚೈದ್ಯ ೧೯

ಓಡಿ ಕೊಲಿಸಿದ ಕಾಲಯವನನು
ಮೂಡಿದವೆ ಹುಲು ಕಲುಗಳಕಟಾ
ವೋಡುಕುಳಿ ಹೋದಲ್ಲಿ ಮಗಧನ ರಾಜಕಾರ್ಯದಲಿ
ಆಡಲರಿಯೆ ವಿಜಾತಿರತ್ನದ
ಖೋಡಿಗಳ ಪಳಿವಾತನೇ ಹರಿ
ತೋಡಿ ಬಯಸುವೆ ಕಿವಿಗರೋಚಕವಾಯ್ತು ತೆಗೆಯೆಂದ ೨೦

ಕಪಟದಲಿ ಭೀಮಾರ್ಜುನರು ಸಹಿ
ತುಪಚಿತ ದ್ವಿಜವೇಷದಲಿ ನಿ
ಷ್ಕಪಟ ಮಗಧನ ಮನೆಯನದ್ವಾರದಲಿ ಹೊಕ್ಕರಲ
ಕೃಪಣರಿವದಿರು ವಿಪ್ರವೇಷದ
ಲಪಸದರು ಕಾದಿದರು ಭೀಷ್ಮಗೆ
ಜಪವಲಾ ಕಂಸಾರಿ ಮಾಡಿದ ಕಷ್ಟ ಕೃತಿಯೆಂದ ೨೧

ಬೆರತನಗ್ಗದ ಮಾಗಧೇಂದ್ರನ
ಮುರಿದ ಮುರುಕಕೆ ಭೀಮನಾತನ
ಸೆರೆಯ ಮನೆಯಲಿ ಸಿಕ್ಕಿದವನೀಪಾಲ ಪಂತಿಗಳ
ಸೆರೆಯನಿವ ಬಿಡಿಸಿದನು ಗಡ ಬೊ
ಬ್ಬಿರಿವ ಪೌರುಷವೇಕೆ ಕಡೆಯಲಿ
ಕರುಬುವವರಾವೈಸಲೇ ನಿಮಗೆಂದನಾ ಚೈದ್ಯ ೨೨

ಕೇಳಿ ಕಿಡಿಗೆದರಿ ತನು ರೋ
ಮಾಳಿ ತಳಿತುದು ರೋಷವಹ್ನಿ
ಜ್ವಾಲೆ ಝಳಪಿಸೆ ಜಡಿದವರುಣಚ್ಛವಿಯಲಕ್ಷಿಗಳು
ಸೂಳುರಿಯ ನಿಡುಸುಯ್ಲು ಕಬ್ಬೊಗೆ
ಜಾಳಿಗೆಯಲೇಕಾವಳಿಯ ಮು
ಕ್ಕಾಳಿ ಕಂದಿತು ಖತಿಯ ಮೊನೆಯಲಿ ಮಸಗಿದನು ಭೀಮ ೨೩

ಸೆರಗ ಸಂವರಿಸಿದನು ಮಕುಟವ
ನುರುಗದಂತಿರೆ ಮುರುಹಿ ಸಚಿವಂ
ಗರುಹಿದನು ಸನ್ನೆಯಲಿ ಸಮರಕೆ ಚಾಪ ಮಾರ್ಗಣವ
ಹೊರಗೆ ಸಂವರಿಸಿರಲಿ ದಳ ಕೈ
ಮರೆಯ ಬೇಡ ಸುನೀತನನು ನಾ
ವ್ವರುಬಿ ನಿಂದಾಕ್ಷಣದಲೊದಗುವುದೆಂದು ಸೂಚಿಸಿದ ೨೪

ಪವನ ತನಯನ ಖತಿಯ ಝಾಡಿಯ
ಹವಣ ಕಂಡರು ಮಸಗಿದರು ಯಾ
ದವರ ಪಡೆಯಲಿ ಸಾಂಬ ಸಾತ್ಯಕಿ ಕಾಮ ಕೃತವರ್ಮ
ತವ ತವಗೆ ಪಾಂಚಾಲ ಕೇಕಯ
ನಿವಹ ಪಾಂಡವ ಸುತರು ಮೊದಲಾ
ದವಗಡೆಯರನುವಾಗೆ ಗಜಬಜವಾಯ್ತು ನಿಮಿಷದಲಿ ೨೫

ಸೆಳೆದಡಾಯುಧವುತ್ತರೀಯವ
ನಿಳುಹಿ ಮುಂಗೈಯಲಿ ವೃಕೋದರ
ಮೊಳಗುವನುವನು ಕಂಡು ಧಿಮ್ಮನೆ ಭೀಷ್ಮನಡಹಾಯ್ದು
ಸೆಳೆದು ಕೊಂಡನು ಖಡುಗವನು ಭುಜ
ವಳಯದಿಂದವುಚಿದನು ತೋಟಿಯ
ತೊಳಸುಗರ ಹೊಯ್ ಹೊಯ್ಯೆನುತ ಗರ್ಜಿಸಿದನಾ ಭೀಷ್ಮ ೨೬

ನೆರಹಿದಿರಿ ಚತುರಾಬ್ಧಿ ವಳೆಯದ
ಧರಣಿಪಾಲ ಸಮುದ್ರವನು ಕಾ
ಹುರುವ ಮಾಡಿದರಕಟ ಕೆಡದೇ ರಾಜಸೂಯ ಮಖ
ಧರಧುರದ ದುರ್ವ್ಯಸನಿಗಳ ನಿ
ಟ್ಟೊರಸಿ ತೆಗೆ ನಿನ್ನವರನೆನುತು
ಬ್ಬರವ ಮಾಣಿಸಿ ಹೂಣಿಗರ ಹೊಯ್ಸಿದನು ಕಲಿ ಭೀಷ್ಮ ೨೭

ಬಿಡು ಬಿಡೆಲೆ ಗಾಂಗೇಯ ಭೀಮನ
ಕಡಿದು ಪೂರ್ಣಾಹುತಿಯನಗ್ನಿಗೆ
ಬಡಿಸಿ ಕೊಡುವೆನು ಸ್ವಾಮಿದ್ರೋಹಿಯ ಕರುಳ ದಂಡೆಗಳ
ಮುಡಿಸುವೆನು ಜಯಸಿರಿಗೆ ನೋಡೆ
ನ್ನೊಡನೆ ಮೇಳವೆ ದಕ್ಷಯಜ್ಞದ
ಮೃಡನ ಮರೆಸುವೆನೆನುತ ಮಿಗೆ ಬೊಬ್ಬಿರಿದನಾ ಚೈದ್ಯ ೨೮

ಬಿಡು ಬಿಡಕಟಾ ಭೀಷ್ಮ ದರ್ಪದಿ
ಕಡುಜರೆದ ಕಳವಳದ ಕುನ್ನಿಗೆ
ಕುಡಿಸುವೆನು ದಿವ್ಯಾಸ್ತ್ರವಿಶಿಖ ವಿಶೇಷದೌಷಧಿಯ
ತಡೆದು ತನ್ನನು ರಾಜಕಾರ್ಯವ
ಕೆಡಿಸಿದೆಯಲಾ ದಕ್ಷಯಜ್ಞದ [ಭೀಮ ೨೯
ಮೃಡನ ಮುರುಕವ ಕಾಬೆನೆನುತೊಡೆಮುರುಚಿದನು

ಮತ್ತೆ ಹಿಡಿದನು ಪವನಜನ ಬಾ
ಗೊತ್ತಿದನು ಮರುಳೇ ಸುರೌಘದ
ತುತ್ತು ಗಂಟಲಲಿಳಿವುದೇ ಗಜಬಜವ ಮಾಡಿದರೆ
ತೆತ್ತಿಗನು ಹರಿ ಯಜ್ಞರಿಪುಗಳ
ಮೃತ್ಯುವರಿಯಾ ನೀನು ಮಿಾರುವ
ದುತ್ತಮಿಕೆಯಲ್ಲೆನುತ ಮಿಗೆ ತಿಳುಹಿದನು ಗಾಂಗೇಯ ೩೦

ಇವನ ಕೊಲುವನು ಮಿಕ್ಕ ಭೂಪರ
ನಿವಹವನು ಮನ್ನಿಸುವೆನೆನೆ ನೀ
ನಿವನ ಕೊಲುವುದಸಾಧ್ಯವೀತನ ನಿಜವನರಿಯೆಯಲ
ಇವ ಹಿರಣ್ಯಾಕ್ಷಕ ಕಣಾ ಮರು
ಭವದೊಳಗೆ ದಶವದನನಿವ ಸಂ
ಭವಿಸಿದನು ಶಿಶುಪಾಲವೆಸರಲಿ ಭೀಮ ಕೇಳೆಂದ ೩೧

ಜನಿಸಿದಾಗಳೆ ಭಾಳದಲಿ ಲೋ
ಚನ ಚತುರ್ಭುಜನಾದನದ್ಭುತ
ನಿನದದಲಿ ನೆಲ ಬಿರಿಯಲೊದರಿದನಂದು ಬಾಲ್ಯದಲಿ
ತನ ತನಗೆ ಜನ ಬೆದರಿತೀತನ
ಮನೆಗೆ ನಾರದ ಬಂದನೀತನ
ಜನನಿ ಬಿನ್ನಹ ಮಾಡಿದಳು ಶಿಶುಪಾಲ ಸಂಗತಿಯ ೩೨

ಆತನೆಂದನು ತಾಯೆ ಶಿಶು ವಿ
ಖ್ಯಾತನಹ ನೀನಾರ ಹಸ್ತದೊ
ಳೀತನನು ಕೊಟ್ಟಾಗಲಡಗುವವಕ್ಷಿ ಭುಜಯುಗಳ
ಆತನೀತನ ಮೃತ್ಯುವಿದು ಸಂ
ಭೂತ ನಿಶ್ಚಯವೆಂದು ಶಿಶುವಿನ
ಮಾತೆಯನು ಸಂತೈಸಿ ನಾರದನಡರಿದನು ನಭವ ೩೩

ಇವನ ಕಾಣಲು ಬಂದರವನಿಪ
ರವರವರ ಕೈಗಳಲಿ ತಾಯ್ತುಂ
ದಿವನನಿತ್ತಳು ಮಾಣವಿವನಧಿಕಾಕ್ಷಿ ಬಾಹುಗಳು
ಇವನ ತಾಯ್ ತಮ್ಮತ್ತೆಯೆಂದು
ತ್ಸವದೊಳೀ ಮುರವೈರಿ ಬರಲಂ
ದಿವನ ತಂದಿವನನ್ವೆ ಕೊಟ್ಟಳು ಹರಿಯ ಹಸ್ತದಲಿ ೩೪

ಆಗಳಿವನಧಿಕಾಕ್ಷಿ ಬಾಹುವು
ನೀಗಿದೊಡನಿವನವ್ವೆ ಕಂಡು
ಬ್ಬೇಗದಲಿ ಕಮಲಾಕ್ಷನಂಘ್ರಿಯುಲೆರಗಿ ಕೈ ಮುಗಿದು
ಮೇಗರೆಯ ಮಾತಲ್ಲ ಬಾಲಕ
ನಾಗುಹೋಗಿನ ಕೊರತೆ ನಿನ್ನನು
ತಾಗುವುದು ನೀ ಸೈರಿಸೆಂದಭಯವನು ಬೇಡಿದಳು ೩೫

ಸೈರಿಸುವೆನಪರಾಧ ಶತವ ಕು
ಮಾರಕನ ತಾ ಕೊಲ್ಲೆನೆಂದೀ
ಶೌರಿ ಭಾಷೆಯ ಮಾಡಿ ಹಿಂಗಿದನಿವನ ತಾಯೊಡನೆ
ಆರಿವನ ಮರಣಕ್ಕೆ ಮೊದಲು ಮು
ರಾರಿಯೋ ನೀನೋ ವಿಚಾರಿಸು
ವೀರ ಮಾರುತಿಯೆನಲು ಕೇಳಿದನಂದು ಶಿಶುಪಾಲ ೩೬

ಎಲವೊ ಗೋಪಕುಮಾರನೆನ್ನನು
ಕೊಲುವನೇ ತಾನಿವನ ಕೈಯ್ಯಿಂ
ದಳಿವವನೆ ಶಿವ ಶಿವ ವಿಕಾರಿಯನೇನ ಮಾಡುವೆನು
ಗಳಹ ಭೀಷ್ಮ ವೃಕೋದರನ ಮೈ
ವಳಿಯ ಭಟನೋ ಮೇಣು ನೀ ಗೋ
ವಳರ ಹಳ್ಳಿಯ ಭಟ್ಟನೋ ಹೇಳೆಂದನಾ ಚೈದ್ಯ ೩೭

ಈ ಕುರುಕ್ಷಿತಿಪಾಲರಲಿ ನೀ
ನಾಕೆವಾಳನು ಗಡ ವಯಃಪರಿ
ಪಾಕವುಳ್ಳವನೀಸು ಕಾಲದಲೋದಿದರಿತವಿದೆ
ಕಾಕನುರೆ ಕೊಂಡಾಡಿ ಗೊಲ್ಲರ
ಗೋಕುಲದ ಗೋಪ ಪ್ರಸಂಗ
ವ್ಯಾಕರಣ ಪಾಂಡಿತ್ಯ ಮೆರೆದುದು ಭೀಷ್ಮ ನಿನಗೆಂದ ೩೮

ಇದು ಮಹಾ ಮಖವಿಲ್ಲಿ ಪೂಜ್ಯನು
ಯದುಗಳರಸನು ಭಟ್ಟನಿಲ್ಲಿಗೆ
ನದಿಯ ಮಗನಿಲ್ಲಿಗೆ ಸದಸ್ಯರು ನಾರದಾದಿಗಳು
ಹುದಿದ ಮರುಭೂಮಿಯಲಿ ಮಾನ್ಯನು
ಖದಿರನಲ್ಲಿಗೆ ಗೂಗೆ ಕೋಗಿಲೆ
ಮುದಿ ನರಿಗಳಲ್ಲಿಗೆ ಸಭಾಸದರೆಂದನಾ ಚೈದ್ಯ ೩೯

ನೀನಲಾ ಧರ್ಮಜ್ಞನಂದಾ
ಮಾನಿನಿಯರ ವಿವಾಹದಲಿ ನೀ
ನೇನ ಮಾಡಿದೆ ಬೇಸರಿಸಿ ಬಳಲಿಸಿದೆ ಬಾಲಕಿಯ
ಏನ ಹೇಳುವೆನೊಂದು ಹಂಸನು
ಮಾನಸದ ತೀರದಲಿ ಪಕ್ಷಿವಿ
ತಾನದಲಿ ಧರ್ಮಜ್ಞನಾಯ್ತಾ ಹಂಸ ನೀನೆಂದ ೪೦

ನುಡಿಗಳಲಿ ಸದ್ಧರ್ಮ ಸಂಗತಿ
ನಡವಳಿಯುಲನ್ಯಾಯವೆಂದೇ
ಕೆಡಹಿದವು ಹಂಸೆಯನು ನಾನಾ ವಿಹಗ ಸಂದೋಹ
ನುಡಿವುದಲ್ಲದೆ ಮೇಣು ನಯದಲಿ
ನಡೆದುದಿಲ್ಲೆಲೆ ಭೀಷ್ಮ ನಿನ್ನನು
ಕಡಿದು ಭೂತಕೆ ಬಡಿಸಿದರೆ ಕೃತಕೃತ್ಯನಹೆನೆಂದ ೪೧

ಕಳೆದ ಕಾಲದ ವೃದ್ಧ ಮೇಲ
ಗ್ಗಳದ ನಿಯಮವ್ರತ ಶ್ರುತಿ ಸ್ಮೃತಿ
ಗಳಲಿ ಪರಿಣತನೆಂಬೆ ಕಡೆಯಲಿ ಗೋಪನಂದನನ
ಬೆಳವಿಗೆಯ ಮಾಡಿದೆ ಮಹೀ ಮಂ
ಡಲದ ರಾಯರನಕಟ ಲಜ್ಜಾ
ಕುಳರ ಮಾಡಿದೆ ಭಂಡ ಫಡ ಹೋಗೆಂದನಾ ಚೈದ್ಯ ೪೨

ಪರಗುಣ ಸ್ತುತಿ ನಿಂದೆಗಳು ಹಿರಿ
ಯರಿಗೆ ಸಾಮ್ಯವೆ ನಿನ್ನ ಜಿಹ್ವೆಗೆ
ವರ ಗುಣಸ್ತವದಿಂದ ಮೇಣ್ಕಂಡೂತಿ ಹರವಹರೆ
ಹಿರಿಯರಿದೆಲಾ ಕಣ್ವ ಪೌಲಾಂ
ಗಿರಸ ಜೈಮಿನಿ ಯಾಜ್ಞವಲ್ಕ್ಯರು
ವರ ಸುಪ್ರೈಕದೊಳಧಿಕರಿದೆಲಾ ಭೀಷ್ಮ ಕೇಳೆಂದ ೪೩

ನಾವು ಮೊದಲಲಿ ನಮ್ಮೊಳಗೆ ಕುಂ
ದಾವುದೇತಕೆ ಹೊಗಳೆಯಿವರಲ
ದಾವಕೊರತೆ ಯುಧಿಷ್ಠಿರನ ನೀನೇಕುಪೇಕ್ಷಿಸಿದೆ
ಈ ವೃಕೋದರ ಪಾರ್ಥರನು ಸಹ
ದೇವ ನಕುಲರನೇಕೆ ಹೊಗಳೆಯ
ದಾವ ಗುಣನಿಧಿಯೆಂದು ಕೃಷ್ಣನ ಬಣ್ಣಿಸಿದೆಯೆಂದ ೪೪

ಗುರುವನಲ್ಲಾ ಕೌರವೇಶ್ವರ
ನರಸಲಾ ಬಾಹ್ಲಿಕನು ರಾಯರ
ಗುರುವಲಾ ಕೊಂಡಾಡಲಾಗದೆ ಚಾಪ ಧೂರ್ಜಟಿಯ
ಗುರುಸುತನು ಸಾಮಾನ್ಯನೇ ಸಂ
ಗರ ಭಯಂಕರನಲ್ಲವೇ ವಿ
ಸ್ತರಿಸಲಾಗದೆ ನಿನ್ನ ಕೃಷ್ಣನ ಹವಣೆಯಿವರೆಂದ ೪೫

ಕವಚ ಕುಂಡಲ ಸಹಿತ ತಾನುದು
ಭವಿಸನೇ ಶೌರ್ಯಾದಿ ಗುಣದಲಿ
ಭುವನದಲಿ ಭಾರಾಂಕ ವೀರರು ಪಡಿಯೆ ಕರ್ಣಂಗೆ
ಇವನನೇಕಗ್ಗಳಿಸೆ ಭೂರಿ
ಶ್ರವನ ಹೊಗಳೆ ಜಯದ್ರಥನು ನಿ
ನ್ನವನ ಹವಣೇ ಶಲ್ಯ ಮುನಿಯನೆ ನಿನಗೆ ಹೇಳೆಂದ ೪೬

ಕುಲದಧಿಕರು ಶೌರ್ಯದಲಿ ವೆ
ಗ್ಗಳರು ಶೀಲದಲುನ್ನತರು ನಿ
ರ್ಮಲಿನರಾಚಾರದಲಿ ಕೋವಿದರಖಿಳ ಕಳೆಗಳಲಿ
ಇಳೆಯ ವಲ್ಲಭರಿನಿಬರನು ನೀ
ಕಳೆದು ನೊಣ ನೆರೆ ಹೂತ ವನವನು
ಹಳಿದು ಹಗಿನಿಂಗೆರಗುವವೊಲಾಯ್ತೆಂದನಾ ಚೈದ್ಯ ೪೭

ಘನನಲಾ ಭಗದತ್ತ ಕಾಂಭೋ
ಜನು ಪದಸ್ಥನಲಾ ವಿರಾಟನ
ತನುಜನೀ ಪಾಂಚಾಲ ಕೇಕಯರೀ ಮಹೀಭುಜರು
ವಿನುತರಲ್ಲಾ ದಂತವಕ್ರನು
ನಿನಗೆ ಕಿರುಕುಳನೇ ಜರಾಸಂ
ಧನ ಸುತನ ನೀನೇಕೆ ಬಣ್ಣಿಸೆ ಭೀಷ್ಮ ಹೇಳೆಂದ ೪೮

ದ್ರುಮನ ಕಿಂಪ್ರುರುಷಾಧಿಪನ ವಿ
ಕ್ರಮವ ಬಣ್ಣಿಸಲಾಗದೇ ಭೂ
ರಮಣರಿದೆಲಾ ಮಾಳವಂಗ ಕಳಿಂಗ ಕೌಸಲರು
ವಿಮಳರಿನಿಬರನುಳಿದು ಕೃಷ್ಣ
ಭ್ರಮೆ ಹಿಡಿದುದೈ ನಿನಗೆ ನಿನ್ನ
ಕ್ರಮದ ಭಣಿತೆಯ ಕರ್ಮಬೀಜವನರಿಯೆ ನಾನೆಂದ ೪೯

ಕುಮತಿ ಕೇಳ್ ಬೊಬ್ಬುಲಿಯ ಬನದಲಿ
ರಮಿಸುವುದೆ ಕಳಹಂಸ ಮಾಯಾ
ಭ್ರಮಿತರಲಿ ಯಾಚಿಸುವನೇ ವರಯೋಗಿ ನಿಜಪದವ
ಸಮರ ಪಟುಭಟ ದರ್ಪಪಿತ್ತ
ಭ್ರಮ ವಿಸಂಸ್ಥುಲ ಚಪಳಚಿತ್ತ
ಸ್ಥಿಮಿತ ಭೂಪರ ಬಗೆವನೇ ತಾನೆಂದನಾ ಭೀಷ್ಮ ೫೦

ಖತಿಯ ಹಿಡಿದುದು ಸಕಲ ರಾಜ
ಪ್ರತತಿಗಳು ದುರ್ಮಾರ್ಗಮಾನ
ವ್ಯತಿಕರದೊಳುಬ್ಬೆದ್ದರನಿಬರು ಜಲಧಿ ಘೋಷದಲಿ
ಕ್ರತುವ ಜಲದಲಿ ಕದಡು ಗಂಗಾ
ಸುತನ ಹೊಯ್ ಕಟವಾಯ ಕೊಯ್ ನಿ
ಶ್ಚಿತ ಘಟಾಗ್ನಿಯಲಿವನ ಸುಡಿಯೆಂದುದು ನೃಪವ್ರಾತ ೫೧

ಬರಿಯ ಮಾತನೆ ಮೆರೆದು ಕಾರ್ಯದ
ಕೊರತೆಯಾದರೆ ನಾಯ್ಗಳೊರಲಿದ
ತೆರನಹುದಲೇ ತೋರಿರೈ ನೀವ್ನಿಮ್ಮ ಪೌರುಷವ
ಇರಿದು ನೀವ್ಕೊಲಲಾರದಿದ್ದರೆ
ನೆರೆಘಟಾಗ್ನಿಯೊಳುರುಹದಿದ್ದರೆ
ಕೆರಹು ನಿಮ್ಮಯ ಬಾಯಲೆಂದನು ಭೂಪರಿಗೆ ಭೀಷ್ಮ ೫೨

ನೆರೆದ ನರಿಗಳ ಮಧ್ಯದಲಿ ಕೇ
ಸರಿಯು ಮನ್ನಿಸುವಂತೆ ಕೃಷ್ಣನ
ಚರಣವನು ಪೂಜಿಸಿದೆವರ್ಘ್ಯಾರುಹನು ಮುರವೈರಿ
ಜರಡುಗಳು ನೀವೀ ಜನಾರ್ದನ
ನೊರೆಗೆ ಬಹರೇ ಪ್ರೀತಿಯೇನೀ
ಪರಿ ವಿಷಾದವೆ ಹೋಗಿಯೆಂದನು ಭೂಪರಿಗೆ ಭೀಷ್ಮ ೫೩

ಅಣಕಿಸುವರೆನ್ನೊಡನೆ ಹಿರಿಯಂ
ಬ್ಬಣವ ತೆಗೆಯಿರಿ ಈ ಮುರಾರಿಯ
ಕೆಣಕಲಾಪರೆ ಕರೆದು ನೋಡಿ ವೃಥಾಭಿಮಾನದಲಿ
ಹಣುಕಿ ಬಾಯ್ಬಡಿದೇನಹುದು ಕೈ
ಗುಣವ ತೋರಿರೆ ಸಾವಿರೊಳ್ಳೆಗೆ
ಮಣಿವನೇ ವಿಹಗೇಂದ್ರನೆಂದನು ಭೂಪರಿಗೆ ಭೀಷ್ಮ ೫೪

ಶಿವಶಿವಾ ಮುದುಗೂಗೆ ಮೆಚ್ಚದು
ರವಿಯನೆಲವೋ ಭೀಷ್ಮ ನಿಲು ಮಾ
ಧವನ ಮರ್ದಿಸಿ ನಿನಗೆ ಜೋಡಿಸುವೆನು ಮಹಾನಳನ
ಯುವತಿಯರು ಹಾರುವರು ಹುಲು ಪಾಂ
ಡವರು ಪತಿಕರಿಸಿದರೆ ನೀನಿಂ
ದೆವಗೆ ಮಾನ್ಯನೆ ಕೃಷ್ಣ ಸಿಂಹಾಸನವನಿಳಿಯೆಂದ ೫೫

ನಿನಗೆ ಮೊದಲೊಳು ನಿಶಿತ ವಿಶಿಖದ
ಮೊನೆಯೊಳರ್ಚಿಸಿ ಬಳಿಕ ಭೀಷ್ಮನ
ಘನ ಘಟಾನಳಕುಂಡದೊಳ್ಸ್ವಾಹಾಸ್ವಧಾಹುತಿಯ
ಅನುಕರಿಸಿ ಬಳಿಕಿನಲಿ ಕುಂತೀ
ತನಯರೈವರ ರಕುತ ಘೃತದಲಿ
ವಿನುತ ರೋಷಾಧ್ವರವ ರಚಿಸುವೆನೆಂದನಾ ಚೈದ್ಯ ೫೬

ಎಂದು ಚಾಪವ ತರಿಸಿ ಚಪ್ಪರ
ದಿಂದ ಹೊರವಡುತವನಿಪಾಲಕ
ವೃಂದವನು ಕೈವೀಸಿದನು ಕರೆ ಗೋಕುಲೇಶ್ವರನ
ಇಂದಲೇ ರಿಪು ರುಧಿರ ಪಾನಾ
ನಂದಕೃತ ಮದ ಶಾಕಿನೀ ಸ್ವ
ಚ್ಛಂದ ಲೀಲಾ ನೃತ್ಯದರ್ಶನವೆಂದನಾ ಚೈದ್ಯ ೫೭

ಡಾವರಿಸಿದುದು ವಿವಿಧ ವಾದ್ಯವಿ
ರಾವವಬುಜೋದ್ಭವನ ಭವನವ
ನಾ ವಿಗಡ ಭಟ ಕಟಕವಿದ್ದುದು ಬಲಿದ ಬೊಬ್ಬೆಯಲಿ
ಗೋವಳನ ಬರಹೇಳು ಧರೆಯಲಿ
ದೇವ ಗಡ ಬರಹೇಳು ತೋರಾ
ಕಾವವರ ತಾ ಕೊಲುವೆನೆಂದೊದರಿದನು ಕಲಿ ಚೈದ್ಯ ೫೮

ಮಿನುಗುದುಂಟಿಗಳ ವಿಕಲ ಮಂತ್ರದ
ಬಿನುಗುಗಳ ಕೈಯಾಹುತಿಗೆ ಕರೆ
ದನಿಮಿಷರ ಪಲ್ಲಟದ ವಿಚಲಿತ ಸೂಕ್ತಿಮಯ ನಿನದ
ತನಿ ಭಯದ ತರಳಾಕ್ಷಿಗಳ ದು
ರ್ಮನದ ಮೋಡಿಯ ಮೊಗದ ಬರಿದೇ
ತೊನೆವ ಗಡ್ಡದ ಮುನಿಗಳಿದ್ದರು ಬಲಿದ ಬೆರಗಿನಲಿ ೫೯

ಹಲ್ಲಣಿಸಿದುದು ಯಾದವರ ಪಡೆ
ಘಲ್ಲಣೆಯ ಘರ್ಘರವ ಘೋಷದ
ಭುಲ್ಲಣೆಯ ಗಂಭೀರ ಭೇರಿಯ ಬಹಳ ರಭಸದಲಿ
ನಿಲ್ಲದಿಳೆ ಪದಹತಿಗೆನಲು ಬಲ
ವೆಲ್ಲ ಭೀಮನ ಸನ್ನೆಯಲಿ ರಣ
ಮಲ್ಲರೊಡ್ಡಿತು ಹೊರಗೆ ನೃಪ ಮೋಹರದ ಬಾಹೆಯಲಿ ೬೦

ಮುನಿಗಳಂಜದಿರಂಜದಿರಿ ಪರಿ
ಜನಕೆ ಗಜಬಜ ಬೇಡ ಯಾದವ
ಜನಪರುಬ್ಬಟೆ ನಿಲಲಿ ಸೈರಿಸಿ ಪಾಂಡು ಸುತರೆನುತ
ಮೊನೆ ನಗೆಯ ಸಿರಿಮೊಗದ ನೆಗಹಿದ
ಜನದಭಯ ಹಸ್ತಾಂಬುಜದ ಹರಿ
ವಿನುತ ಸಿಂಹಾಸನವನಿಳಿದಾ ಧುರಕೆ ಹೊರವಂಟ ೬೧

ಅಂದಿನಲಿ ಶಿಶುಪಾಲಕನ ತಾ
ಯ್ಬಂದು ಮಗನಪರಾಧ ಶತದಲಿ
ಕಂದಲಾಗದು ಚಿತ್ತವೆಂದಳು ನಮ್ಮನನುಸರಿಸಿ
ಇಂದು ಖತಿಯಿಲ್ಲೆಮಗೆ ಸೈರಿಸ
ಬಂದುದಿಲ್ಲವಗೆರಡು ತಪ್ಪಿನೊ
ಳೆಂದು ಮುರಹರ ನಗುತ ನುಡಿದನು ನಾರದಾದ್ಯರಿಗೆ ೬೨

ಈ ಮಹಾ ಯಜ್ಞವನು ಕೆಡಿಸುವೆ
ನೀ ಮಹೀಶನ ಮುರಿವೆನೆಂದೇ
ವೈಮನಸ್ಯದಿ ಬಗೆದು ಮೊನೆ ಮಾಡಿದನು ನುಡಿಯೆರಡ
ತಾಮಸನ ತರಿದಖಿಳ ಭೂತ
ಸ್ತೋಮ ತುಷ್ಟಿಯ ಕೀರ್ತಿ ಫಲಿಸಲಿ
ಯಿಾ ಮಹಾಶರಕೆನುತ ಕೊಂಡನು ದಿವ್ಯಕಾರ್ಮುಕವ ೬೩

ಝುಂಕೆ ಮಿಗೆ ಹೊರವಂಟುದೆಡ ಬಲ
ವಂಕದಲಿ ಯದುಸೇನೆ ಪಾಂಡವ
ರಂಕೆಯಲಿ ದಳ ಜೋಡಿಸಿತು ಝಳಪಿಸುವ ಕೈದುಗಳ
ಮುಂಕುಡಿಯ ಮೋಹರದ ದಳ ನಿ
ಶ್ಶಂಕೆಯಲಿ ಜೋಡಿಸಿತು ಭೂಪರ
ಬಿಂಕ ಬೀತುದು ಭೀತಿ ಹೊತುದು ಹುದುಗಿತಾಟೋಪ ೬೪

ತೊಲಗಿದನು ಕುರುರಾಯ ಪಾಂಡವ
ರೊಳಗೆ ತಪ್ಪಿಲ್ಲೆನುತ ಮಿಗೆ ಕುರು
ತಿಲಕನಾವೆಡೆಯೆನುತ ಬಳಿವಿಡಿದರು ನೃಪಾಲಕರು
ಕಲಿ ಜಯದ್ರಥ ಮಾದ್ರಪತಿ ಸೌ
ಬಲ ಕಳಿಂಗ ಕರೂಷ ನೃಪ ಕೌ
ಸಲರು ತಿರುಗಿತು ಬೇರೆ ಭಗದತ್ತಾದಿಗಳು ಸಹಿತ ೬೫

ಚೆಲ್ಲಿತೀ ನೃಪಯೂಥ ಜಾರಲಿ
ಜಳ್ಳುಗಳು ಜಲಜಾಕ್ಷನ ಪ್ರತಿ
ಮಲ್ಲ ತಾನೇ ಸಾಲದೇ ಹಾರುವೆನೆ ಕೆಲಬಲನ
ಖುಲ್ಲರಾಯರು ನಿಲಲಿ ಗೊಲ್ಲರ
ಹಳ್ಳಿಗಾರನ ಕೂಡೆ ಬಿರುದಿನ
ಕಲ್ಲಿಗಳ ತಮ್ಮೆದೆಯಲೊತ್ತಲಿಯೆಂದನಾ ಚೈದ್ಯ ೬೬

ಎನುತ ಖಳನಿದಿರಾಗಿ ಮಧು ಮ
ರ್ದನನ ಹಳಚಿದನಸುರ ರಿಪುವಿನ
ಮೊನೆಗಣೆಯಲೇ ಮುಳುಗಿದನು ಬಳಿಕಾ ಮುಹೂರ್ತದಲಿ
ದನುಜ ವೈರಿಯ ಮುಸುಕಿದನು ತನ
ತನಗೆ ನೋಟಕವಾಯ್ತು ಭೂಪತಿ
ಜನ ಸುನೀತ ಮುರಾರಿಗಳ ಕೌತೂಹಲಾಹವಕೆ ೬೭

ಬಿಡುವ ತೊಡಚುವ ಸಂಧಿಸುವ ಜೇ
ವಡೆವ ಹೂಡುವ ತಾಗಿಸುವ ಹಿಳು
ಕಿಡುವ ಹರಿಕುವ ಬೆಸುವ ಭೇದಿಸುವ ಸಮ ಚಾಪಳವ
ನುಡಿವ ಕವಿ ಯಾರೈ ಬರಿಯ ಬಾ
ಯ್ಬಡಿಕನೇ ಶಿಶುಪಾಲನೀ ಪರಿ
ನಡೆವುದೇಕೈ ಹರಿಯೊಡನೆ ಸಮಬೆಸನ ಬಿಂಕದಲಿ ೬೮

ಸೋತನೈ ಹರಿಯೆಂದು ಚೈದ್ಯನ
ಬೂತುಗಳು ಬಣ್ಣಿಸಿದರೀ ನಿ
ರ್ಭೀತ ಯಾದವ ಸೈನ್ಯವಿದ್ದುದು ಹರುಷ ಕೇಳಿಯಲಿ
ಈತ ರಾವಣ ಮುನ್ನ ಭುವನ
ಖ್ಯಾತನೆಂದಮರರು ವಿಮಾನ
ವ್ರಾತದಲಿ ನೆರೆ ನೋಡುರ್ತಿರ್ದುದು ಸಮರ ಸಂಭ್ರಮವ ೬೯

ಧರಣಿಪತಿ ಕೇಳ್ ಕೃಷ್ಣ ಶಿಶು ಪಾ
ಲರ ಮಹಾ ಸಂಗ್ರಾಮ ಮಧ್ಯದೊ
ಳುರಿದುದಿಳೆ ಹೊಗೆದುದು ದಿಶಾವಳಿ ಧೂಮಕೇತುಗಳು
ತರಣಿ ಮಂಡಲ ಮಾಲೆಗಳು ವಿ
ಸ್ತರಿಸಿತಾಕಾಶದಲಿ ಪರ್ವದ
ಲುರವಣಿಸಿದನು ರಾಹು ಚಂದ್ರಾದಿತ್ಯ ಮಂಡಲವ ೭೦

ನಡುಗಿತವನಿಯಕಾಲದಲಿ ಬರ
ಸಿಡಿಲು ಸುಳಿದುದು ಹಗಲು ತಾರೆಗಳ
ಳಿಡಿದವಭ್ರವಲಿಳೆಗೆ ಸುರಿದುದು ರುಧಿರಮಯ ವರ್ಷ
ಮಿಡುಕಿದವು ಪ್ರತಿಮೆಗಳು ಶಿಖರದಿ
ನುಡಿದು ಬಿದ್ದುದು ಕಳಶ ಹೆಮ್ಮರ
ವಡಿಗಡಿಗೆ ಕಾರಿದವು ರುಧಿರವನರಸ ಕೇಳೆಂದ ೭೧

ನೆಳಲು ಸುತ್ತಲು ಸುಳಿದುದಿನ ಮಂ
ಡಳಕೆ ಕಾಳಿಕೆಯಾಯ್ತು ಫಲದಲಿ
ಫಲದ ಬೆಳವಿಗೆ ಹೂವಿನಲಿ ಹೂವಾಯ್ತು ತರುಗಳಲಿ
ತಳಿತ ಮರನೊಣಗಿದವು ಕಾಷ್ಠಾ
ವಳಿಗಳುರೆ ತಳಿತವು ತಟಾಕದ
ಸಲಿಲವುಕ್ಕಿತು ಪಾಂಡುಪುತ್ರರ ಪುರದ ವಳಯದಲಿ ೭೨

ಬೆದರಿದನು ಯಮಸೂನು ಭಯದಲಿ
ಗದಗದಿಸಿ ನಾರದನ ಕೇಳಿದ
ನಿದನಿದೇನೀ ಪ್ರಕೃತಿ ವಿಕೃತಿಯ ಸಕಳ ಚೇಷ್ಟೆಗಳು
ಇದು ಕಣಾ ಚೈದ್ಯಾದಿಗಳ ವಧೆ
ಗುದುಭವಿಸಿದುದಲೇ ಮುರಾರಿಯೊ
ಳುದಯಿಸುವವುತ್ಪಾತ ಚೇಷ್ಟೆಗಳೆಂದನಾ ಮುನಿಪ ೭೩

ಈ ನೆಗಳಿದುತ್ಪಾತ ಶಾಂತಿ ವಿ
ಧಾನವೇನೆನೆ ಕೃಷ್ಣ ಚೇಷ್ಟೆಯೆ
ಹಾನಿ ವೃದ್ಧಿ ವಿನಾಶವಭ್ಯುದಯ ಪ್ರಪಂಚದಲಿ
ಮಾನನಿಧಿಯೇ ವೇದಸೂಕ್ತ ವಿ
ಧಾನದಲಿ ಪರಿಹಾರ ವಿಶ್ವ
ಕ್ಷೇಮಮಯವೀ ಲೋಕ ಯಾತ್ರೆಗಳೆಂದನಾ ಮುನಿಪ ೭೪

ಆ ಹರಿಯೆ ನಿಮಗಿಂದು ಜೀವ
ಸ್ನೇಹಿತನು ನಿಮಗಾವ ಚಿಂತೆ ವಿ
ಮೋಹ ಚೇಷ್ಟೆಗಳಿವನ ವಧೆಗೋ ಬಲ್ಲರಾರಿದನು
ಊಹಿಸಲು ಬೇಡೆಂದು ಮುನಿಪತಿ
ಗಾಹಿನಲಿ ತಿಳುಹಿದನು ಘನ ಸ
ನ್ನಾಹರೆಚ್ಚಾಡಿದರು ಶಿಶುಪಾಲಕ ಮುರಾಂತಕರು ೭೫

ಕಾದಿದರು ವಿವಿಧಾಸ್ತ್ರ ವಿದ್ಯಾ
ಭೇದದಲಿ ರಥಭಂಗ ಚಾಪ ವಿ
ಭೇದ ಶಸ್ತ್ರಾಸ್ತ್ರೌಘ ಸಂಹರಣ ಪ್ರಪಂಚದಲಿ
ಈ ದುರಾತ್ಮನ ನಿಲಿಸಿ ನಿಮಿಷದೊ
ಳಾ ದಯಾಂಬುಧಿ ತುಡುಕಿದನು ತ್ರೈ
ವೇದಮಯಮೂರ್ತಿತ್ರಯಾತ್ಮಕ ವರ ಸುದರ್ಶನವ ೭೬

ಬೆಸಸಿದನು ಚಕ್ರವನು ಧಾರಾ
ವಿಸರಧೂತ ಪರಿಸ್ಫುಲಿಂಗ
ಪ್ರಸರ ತೇಜಃಕಣ ಪರಿಪ್ಲುತ ನವ್ಯ ಶತಭಾನು
ದೆಸೆ ದೆಸೆಗೆ ದುವ್ವಾಳಿಸುವ ಬೆಳ
ಗೆಸೆಯೆ ಬಂದು ಸುನೀತ ಕಂಠದ
ಬೆಸುಗೆ ಬಿಡಲೆರಗಿದುದು ಹಾಯ್ದುದು ತಲೆ ನಭಸ್ಥಳಕೆ ೭೭

ಹರಿಗೊರಳ ಚೌಧಾರೆಯಲಿ ಧುರು
ಧುರಿಸಿ ನೂಕಿತು ರಕುತವದರೊಳು
ಮಿರುಪ ತೇಜಃಪುಂಜವುಕ್ಕಿತು ಹೊದರ ಹೊಳಹಿನಲಿ
ತುರುಗುವೆಳಗಿನ ಜೋಕೆಯಲಿ ಜಗ
ವರಿಯೆ ಬಂದು ಮುರಾರಿಯಂಘ್ರಿಯೊ
ಳೆರಗಿ ನಿಂದುದು ನಿಜನೆಲೆಗೆ ವಿಜಯಾಭಿಧಾನದಲಿ ೭೮

ತಗ್ಗಿತುರು ಕಳಕಳ ವಿಷಾದದ
ಸುಗ್ಗಿ ಬೀತುದು ರಾಯರೀಚೆಯ
ಮಗ್ಗುಲಲಿ ಮೇಳೈಸಿ ಮೆರೆದರು ಮತ್ತೆ ಬಾಂಧವರು
ನೆಗ್ಗಿದವು ಸೆನಹವನ ಸಖಿಗಳು
ಮುಗ್ಗಿದರು ಹುರುಡಿನ ವಿಘಾತಿಯು
ಲಗ್ಗಿಗರು ಹಣುಗಿದರು ಶಿಶುಪಾಲಾವಸಾನದಲಿ ೭೯

ಈಸು ಹಿರಿದಿಲ್ಲೆಂದು ಕೆಲಬರು
ಲೇಸ ಮಾಡಿದನಸುರ ರಿಪುವಿವ
ನೀಸು ಬಾಹಿರನೆಂದರಿಯೆವಾವೆಂದು ಕೆಲಕೆಲರು
ಐಸಲೇ ಕೃಷ್ಣಂಗೆ ಮುನಿದವ
ರೇಸು ದಿನ ಬದುಕುವರು ಲೇಸಾ
ಯ್ತೀ ಸುನೀತಂಗೆಂದು ನಗುತಿರ್ದುದು ನೃಪಸ್ತೋಮ ೮೦

ಗೋಳಿಡುತ ಬಂದೆರಗಿದರು ಶಿಶು
ಪಾಲ ತನುಜರು ಕೃಷ್ಣನಂಘ್ರಿಗೆ
ಲಾಲಿಸಿದನನಿಬರನು ಸಂತೈಸಿದನು ಕರುಣದಲಿ
ಮೇಲುಪೋಗಿನ ವಿಧಿ ವಿಹಿತ ಕ
ರ್ಮಾಳಿಗಳ ಮಾಳ್ಪವನ ಮಗಗೆ ಕೃ
ಪಾಳು ಪಟ್ಟದ ಸೇಸೆದಳಿದನು ವೀರನಾರಯಣ ೮೧

ಹನ್ನೊಂದನೆಯ ಸಂಧಿ

ಸೂ. ರಾಜಸೂಯ ಕ್ರತು ಸಮಾಪ್ತಿಯೊ
ಳಾ ಜನಾರ್ದನ ಮುಖ್ಯರನು ಯಮ
ರಾಜಸುತ ಕಳುಹಿದನು ಹೊಕ್ಕರು ತಮ್ಮ ನಗರಿಗಳ

ಕೇಳು ಜನಮೇಜಯ ಧರಿತ್ರೀ
ಪಾಲ ರಣ ಗಜಬಜದ ಗೋಳಾ
ಗೋಳಿ ತಣಿತುದು ಹಂತಿಗಟ್ಟಿತು ಮತ್ತೆ ನೃಪನಿಕರ
ಮೇಲಣಂತರ್ವೇದಿಗಳ ಮುನಿ
ಪಾಳಿ ಮಂತ್ರಾಹುತಿಗೆ ಕವಿವುರಿ
ನಾಲಗೆಯ ಲಾವಣಿಗೆ ತಳಿತುದು ಯಜ್ಞಕುಂಡದಲಿ ೧

ತಳಿತು ತಿವಿದಾಡಿದವು ಮುರಿದೊಡ
ಗಲಸಿದವು ಹೊಗೆ ಸುತ್ತಿ ಸಿಮಿ ಸಿಮಿ
ಮೊಳಗಿ ಹೊದರೆದ್ದವು ಸಗಾಢದಲುಬ್ಬಿ ಭಗು ಭುಗಿಸಿ
ಸುಳಿ ಸುಳಿದು ಭೋರೆಂದು ಬಿಗಿದ
ವ್ವಳಿಸಿದವು ಘೃತ ಧಾರೆಗಳಿಗು
ಚ್ಚಳಿಸಿದವು ಹರಹಿನಲಿ ನಾಲಗೆ ಹವ್ಯವಾಹನನ ೨

ಶ್ರುತಿ ವಿಧಾನರ ವಿಮಳ ಪೂರ್ಣಾ
ಹುತಿಯು ಪಾರಾಯಣದ ನಿಗಮ
ಪ್ರತತಿಗಳ ಪರಿಪೂತ ಪರಿಮಳಮಯ ದಿಶಾವಳಿಯ
ಕ್ರತು ಸಮಾಪ್ತಿಯಲವಭೃತದ ಭೂ
ಪತಿಯ ವಿಮಳಸ್ನಾನ ಪುಣ್ಯೋ
ಚಿತದಲೋಕುಳಿಯಾಡಿ ದಣಿದುದು ಲೋಕ ಸುರ ನರರ ೩

ಅರಸ ಚಿತ್ರವಿಸೊಂದು ಲಕ್ಷದ
ಧರಣಿಯಮರರ ಭೋಜನಾಂತಕೆ
ಮೊರೆವುದೊಂದೇ ಬಾರಿ ಶಂಖಧ್ವನಿ ಛಡಾಳದಲಿ
ಪರುಠವಣೆಯಿದು ರಾಜ ಸೂಯಾ
ಧ್ವರದ ಮೊದಲವಸಾನ ಪರಿಯಂ
ತರದೊಳೋರಂತದಲಿ ಹಗಲಿರುಳೂದಿತನವರತ ೪

ಏಸು ಲಕ್ಷವದೇಸು ಕೋಟಿಯ
ದೇಸು ನಿರ್ಬುದವೇಸು ಖರ್ವವ
ದೇಸು ಪದ್ಮದ್ವಿಜರ ಗಣನೆಯನರಿವರಾರದನು
ಏಸು ಭಕ್ಷ್ಯೋದನದ ಪರ್ವತ
ರಾಶಿ ದಧಿ ಘೃತ ದುಗ್ಧ ಮಧು ವಾ
ರಾಸಿಯೊಡ್ಡಣೆ ಮೆರೆದುದಿಂದ್ರಪ್ರಸ್ಥ ನಗರಿಯಲಿ ೫

ಓಗರದ ರಾಶಿಗಳ ಗಿರಿ ಕಂ
ಡಾಗಲಂತಿರೆ ಮರಳಿ ಕಾಣೆನು
ಸಾಗರದವೊಲೆ ದಧಿ ಘೃತಾದಿ ಮಹಾ ಪ್ರವಾಹಚಯ
ಆಗಳಂತಿರೆ ಬತ್ತುವವು ನಿಮಿ
ಷಾಗಮಕೆ ತುಂಬುವವು ಯಮಜನ
ಯಾಗಲಕ್ಷ್ಮಿಯನಲ್ಪಮತಿ ಬಣ್ಣಿಸುವಡರಿದೆಂದ ೬

ಅರಸ ಮೈಯಿಕ್ಕಿದನು ಸನ್ಮುನಿ
ವರ ಸಮಾಜಕೆ ನಿಮ್ಮ ಕೃಪೆಯಲಿ
ಧರಣಿಪಾಧ್ವರ ಸಿದ್ಧಿಯಾಯ್ತು ನಿರಂತರಾಯದಲಿ
ಕರುಣ ನಿಮ್ಮದು ನಿಮ್ಮ ವಿಗೆ ಸ
ತ್ಕರಿಸಲರಿಯೆನು ಹೆಚ್ಚು ಕುಂದಿನ
ಹುರುಳನೀಕ್ಷಿಸಲಾಗದೆಂದನು ಮುಗಿದು ಕರಯುಗವ ೭

ಮನ್ನಿಸಿದನವರುಗಳನುಡುಗೊರೆ
ಹೊನ್ನ ವಿವಿಧಾಭರಣ ಪಶುಗಳ
ಲುನ್ನತಾಶೀರ್ವಾದ ವಚನದೊಳವನಿಪನ ಹರಸಿ
ಸನ್ನುತರು ತಮ್ಮಾಶ್ರಮಕೆ ಸಂ
ಪನ್ನ ಸತ್ಯರು ಮರಳಿದರು ಪ್ರತಿ
ಪನ್ನ ಯಜ್ಞ ವಿಳಾಸನೊಪ್ಪಿದನಿಂದ್ರ ವಿಭವದಲಿ ೮

ರಾಜ ವರ್ಗವನವರವರ ನಿಜ
ತೇಜ ಮಾನ್ಯೋಚಿತದ ಗಜ ರಥ
ವಾಜಿ ವಿವಿಧಾಭರಣ ವಸನ ವಧೂ ಕದಂಬದಲಿ
ಆ ಜಗತ್ಪತಿಯುಳಿಯೆ ಪಾರ್ಥಿವ
ರಾಜಿಯನು ಮನ್ನಿಸಿ ಯುಧಿಷ್ಠಿರ
ರಾಜನನುಜರು ಕೂಡಿ ಕಳುಹಿಸಿದನು ಮಹೀಶ್ವರರ ೯

ಫಲುಗುಣನು ಧೃತರಾಷ್ಟ್ರಭೀಷ್ಮರ
ಕಳುಹಿಸಿದನು ಗುರು ಗುರುತನೂಜರ
ಬಳಿಯೊಳನಿಲಜ ಬಂದನಾ ಕೃಪನೊಡನೆ ಸಹದೇವ
ಬಳಿಯಲೈದಿದ ನಕುಲನಾ ಸೌ
ಬಲನ ಸೈಂಧವ ಶಲ್ಯನನು ಕೌ
ಸಲ ವಿರಾಟ ದ್ರುಪದಸುತ ಭಗದತ್ತ ಭೂಪತಿಯ ೧೦

ಅರಸ ಕೇಳೈ ಪಾಂಡ್ಯ ಭೂಮೀ
ಶ್ವರ ಕಳಿಂಗ ಪ್ರಮುಖ ತೆಂಕಣ
ಧರಣಿಪರ ಬಳಿಯಲಿ ಘಟೋತ್ಕಚ ಯೋಜನಾಂತರವ
ವರ ಕುಮಾರರು ನಿಖಿಳ ಪೃಥ್ವೀ
ಶ್ವರರನವರವರುಚಿತದಲಿ ಸತು
ಕರಿಸಿ ಮರಳಿದು ಬಂದರಿಂದ್ರಪ್ರಸ್ಥಪುರವರಕೆ ೧೧

ಕರೆಸಿದನು ಹರಿ ಪಾಂಡು ಪುತ್ರರ
ನರಸಿ ಸಹಿತೇಕಾಂತ ಭವನದೊ
ಳುರುತರ ಪ್ರೇಮೈಕ ರಸ ಸಂಸಿಕ್ತ ವಚನದಲಿ
ಭರಿತವಾಯಿತೆ ರಾಜಸೂಯಾ
ಧ್ವರ ಸದಾಹುತಿ ತೃಪ್ಯಮಾಣಾ
ಮರ ಮಹೀಶ್ವರ ವಿಭವ ವಿಳಸಿತ ಪಾಂಡು ಪದವೆಂದ ೧೨

ದೇವನಂಘ್ರಿಯ ಮುಸುಕಿದವು ಮುಕು
ಟಾವಳಿಗಳೈವರ ಸತಿಯ ಸಂ
ಭಾಷಣೆಯ ಮಧುರೋಕ್ತಿರಸದಲಿ ನಗುತ ಮನ್ನಿಸಿದ
ಓವಿದನು ಮುರವೈರಿ ಕಾರು
ಣ್ಯಾವಲೋಕನದಿಂದ ನಿನ್ನವ
ರಾವ ಭವದಲಿ ಭಜಿಸಿದರೊ ನಿಷ್ಠೆಯಲಿ ಹರಿಪದವ ೧೩

ದೇವ ನಿಮ್ಮಡಿಯಂಘ್ರಿ ಕಮಲವ
ನಾವ ನೆನೆದನವಂಗೆ ತುಸುವ
ಲ್ಲಾ ವಿರಿಂಚಾದ್ಯಮರ ಪದವಿದು ನಿಗಮ ಸಿದ್ಧವಲೆ
ನಾವು ಸಾಕ್ಷಾದಮಳ ಮೂರ್ತಿ ಸು
ಧಾವಸೇಚನ ಧೂತ ಕಿಲ್ಬಿಷ
ರಾವುದರಿದೈ ಬೊಪ್ಪನವರಿಗೆ ಶಕ್ರಪದವೆಂದ ೧೪

ಮಸಗಿದರೆ ಮಾಗಧನು ಯಜ್ಞವ
ಮಿಸುಕಲೀವನೆ ಚೈದ್ಯನಿಂದು
ಬ್ಬಸವ ಮಾಡಿದೊಡೆಮ್ಮ ಕೈಯಲಿ ಹರಿಪ ಹೆಕ್ಕಳವೆ
ಶಿಶುವೊರಲಿದರೆ ಕಂಬದಲಿ ತೋ
ರಿಸಿದ ಕರುಣಾಜಲಧಿಯೇ ಪಾ
ಲಿಸಿದೆಲಾ ಪಾಂಡವರನೆಂದಳು ಹೊರಳಿ ಚರಣದಲಿ ೧೫

ಏಳೆನುತ ತೆಗೆದಪ್ಪಿದನು ಕರು
ಣಾಳು ಪರಿತೋಷಾಶ್ರುಪೂರ್ಣ ವಿ
ಶಾಲ ಲೋಚನ ನೋಡಿದನು ತನ್ನವರನೊಲವಿನಲಿ
ಬಾಲಕಿಯೆ ಬಾ ತಂಗಿ ಬಾ ನೀ
ಲಾಳಕಿಯೆ ಬಾಯೆನುತ ಮಿಗೆ ಪಾಂ
ಚಾಲೆಯನು ಕರೆದಸುರರಿಪು ಸೂಚಿಸಿದನಂಗನೆಗೆ ೧೬

ನಂಬದಿರು ಸಿರಿಯನು ಪತಿವ್ರತೆ
ಯೆಂಬರಿಗೆ ನೀ ಗುರು ವಿಷಾದ ವಿ
ಡಂಬ ಹರುಷಂಗಳಲಿ ನೀನೀಹುದೇಕ ಚಿತ್ತದಲಿ
ತುಂಬುವುದು ಬತ್ತುವುದು ರಾಜ್ಯದ
ಡೊಂಬು ಹರಿಮೋಖಲೆಯ ವಿದ್ಯಾ
ಡಂಬರವಿದೆಂದಸುರರಿಪು ಸೂಚಿಸಿದನಂಗನೆಗೆ ೧೭

ವಿಷವ ಗೆಲಿದಿರಿ ಹಿಂದೆ ಕಿಚ್ಚಿನ
ದೆಸೆಯಲುಳಿದಿರಿ ದಾಯಗರು ದು
ರ್ವ್ಯಸನಿಗಳು ದುಸ್ಸಹವು ನಿಮ್ಮಭ್ಯುದಯವಹಿತರಿಗೆ
ವಿಷಮವಿವಲೇ ದ್ಯೂತ ಮೃಗಯಾ
ವ್ಯಸನ ಪಾರ್ಥಿವ ಜಾತಿಗಿವು ದು
ರ್ವಿಷಯವಿವರಲಿ ನೆಗ್ಗಿದರು ನಳ ದಶರಥಾದಿಗಳು ೧೮

ಸೋತು ನಡೆವುದು ಹಿರಿಯರಲಿ ಸಂ
ಪ್ರೀತಿಯನು ಸುಜನರಲಿ ನಿರ್ಮಳ
ನೀತಿಯನು ಪರಿವಾರ ಪುರಜನ ನಾಡು ಬೀಡಿನಲಿ
ಖ್ಯಾತಿಯನು ಧರ್ಮದಲಿ ವೈರಿ
ವ್ರಾತದಲಿ ಪೌರುಷವನಖಿಳ
ಜ್ಞಾತಿಗಳಲೆಚ್ಚರಿಕೆಯೊಳಗಿಹುದೆಂದನಸುರಾರಿ ೧೯

ಎಂದು ಬುದ್ಧಿಯ ಹೇಳಿ ಪಾರ್ಥನ
ನಂದನನ ಕರೆಸಿದನು ತಾಯ್ಸಹಿ
ತೆಂದನವರಿಗೆ ನಯುದಲುಚಿತ ಪ್ರೀತಿ ವಚನದಲಿ
ಬಂದು ಕುಂತಿಗೆ ಸಾರನಗೆ ನುಡಿ
ಯಿಂದ ವಿನಯವ ಮಾಡಿ ಪಾಂಡವ
ನಂದನರ ಮನ್ನಿಸಿದನತಿ ಕಾರುಣ್ಯ ಭಾವದಲಿ ೨೦

ಯಾದವರು ಪಾಂಡವರು ತನ್ನವ
ರಾದುದದುವೆ ಕುಟುಂಬವದು ಮಹ
ದಾದಿ ಸೃಷ್ಟಿಗದಾರ ರಕ್ಷೆ ಕುಟುಂಬವಾವನದು
ಆದರಿಸಿದನು ಕೆಲಬರನು ಹೊರ
ಗಾದವರು ಕೆಲರಾಯ್ತು ಹರಿ ಮಾ
ಯಾ ದುರಾಗ್ರಹ ವೃತ್ತಿಯಿಾ ಹದನೆಂದನಾ ಮುನಿಪ ೨೧

ಆ ಶುಭಗ್ರಹದುದಯದಲಿ ತಿಥಿ
ರಾಶಿ ನಕ್ಷತ್ರಾದಿ ಪುಣ್ಯೋ
ದ್ಭಾಸಮಾನ ಮುಹೂರ್ತದಲಿ ಸುಸ್ವರ ವಿಳಾಸದಲಿ
ಭೂಸುರಾಶೀರ್ವಾದದಲಿ ಲ
ಕ್ಷ್ಮೀಶ ಪಯಣವ ಮಾಡಿದನು ಕ
ಟ್ಟಾಸುರದಲೊದರಿದವು ಘನ ಗಂಭೀರ ಭೇರಿಗಳು ೨೨

ದೇಶದಲಿ ಕಾಲದಲಿ ದೆಸೆಯಲಿ
ರಾಸಿಯಲಿ ತಾರಾಗ್ರಹಾದಿಗ
ಳೈಸರಲಿ ತಾ ತನ್ನ ಚೇಷ್ಟೆಗಳಿವರ ವರ್ತನಕೆ
ಈಸು ಮಹಿಮೆಯ ಮೆರೆಸಿ ಲೋಕ ವಿ
ಳಾಸ ಚೇಷ್ಟೆಯನನುಸರಿಸಿ ನರ
ವೇಷವನು ನಟಿಸಿದನು ಹರಿ ಹೂಳಿದ ನಿಜೋನ್ನತಿಯ ೨೩

ಕಲಿ ವಿಡೂರಥ ಸಾಂಬ ಸಾತ್ಯಕಿ
ದಳಪತಿ ಪ್ರದ್ಯುಮ್ನ ಯಾದವ
ಕುಲ ಸಚಿವನಕ್ರೂರನುದ್ಧವ ಚಾರು ಕೃತವರ್ಮ
ಬಲು ಪದಾತಿಯ ರಥ ನಿಕರದ
ಗ್ಗಳೆಯ ಗಜ ವಾಜಿಗಳ ಸಂದಣಿ
ಯೊಳಗೆ ನಿಂದರು ಕೃಷ್ಣರಾಯನ ರಥದ ಬಳಸಿನಲಿ ೨೪

ಅನುಜ ತನುಜರು ಸಹಿತ ಕುಂತೀ
ತನಯ ದೂರಕೆ ಕಳುಹಿ ಮರಳಿದು
ಮನೆಗೆ ಬಂದನು ಕೃಷ್ಣವಿರಹ ವಿಶಾಲ ಖೇದದಲಿ
ಮುನಿಪ ವೇದವ್ಯಾಸ ಧೌಮ್ಯರ
ನನುಸರಿಸಿ ದಾಹಿಸುವ ದುಗುಡವ
ನನಿತುವನು ಬಿನ್ನವಿಸಿದನು ಮಿಡಿಮಿಡಿದು ಕಂಬನಿಯ ೨೫

ಅಸುರರಿಪು ಕೃಪೆಯಿಂದ ನಿರ್ವಾ
ಹಿಸಿದನೀ ಯಜ್ಞವನು ಪೂರ್ವದ
ವಸುಮತೀಶರ ಪಾಡಿಗೆಣೆಯೆಂದೆನ್ನ ಪತಿಕರಿಸಿ
ಬಿಸುಟು ಬಿಜಯಂಗೈದನೀಯಸು
ಬ್ಬಸವನಾರೊಡನುಸುರುವೆನು ಹಿಂ
ದೆಸೆವ ಗೋಕುಲವಾಯ್ತು ಪುರವಿದು ಕೃಷ್ಣವಿರಹದಲಿ ೨೬

ಅರಸ ಕೇಳ್ಳೈ ದೈತ್ಯ ದಾನವ
ರುರವಣೆಯ ಯದು ನಾಯಕರು ನಿ
ಸ್ತರಿಸಲರಿಯರು ಕೃಷ್ಣನಿಲ್ಲದೆ ಭೀತಿ ದ್ವಾರಕೆಗೆ
ಕರುಣ ನಿಮ್ಮಲಿ ಕಿರಿದೆ ನಿಮ್ಮೊಳ
ಗೆರಕವಲ್ಲವೆ ಚಿಂತೆ ಸಾಕಂ
ತಿರಲಿಯೆಂದವನೀಶನನು ಸಂತೈಸಿದನು ಮುನಿಪ ೨೭

ಆ ಮುಕುಂದನ ನೆನಹು ನಮಗೆ ನಿ
ರಾಮಯವು ನೀವಿರಲು ಚಿಂತಾ
ವೈಮನಸ್ಯದ ವೇಧೆ ಮುರಿದುದು ಸಾಕದಂತಿರಲಿ
ಈ ಮಹೋತ್ಪಾತ ಪ್ರಬಂಧ ವಿ
ರಾಮ ಕರ್ಮವ ಬೆಸಸಿಯೆನೆ ನಗು
ತಾ ಮುನೀಶ್ವರ ನುಡಿದನವನೀಪತಿ ಶಿರೋಮಣಿಗೆ ೨೮

ಇದು ಕಣಾ ಕುರುರಾಯ ವಂಶಾ
ಭ್ಯುದಯ ವಿಗ್ರಹಪೂರ್ವ ಸೂಚಕ
ವಿದು ಸುಯೋಧನ ನೃಪನ ಕತಿಪಯ ಕಾಲ ಸುಖಬೀಜ
ಇದು ಸಮಸ್ತ ಕ್ಷತ್ರ ಕುಲ ವಾ
ರಿದಘಟೋಚ್ಚಾಟನ ಸಮೀರಣ
ವಿದರ ಫಲ ನಿಮಗಪಜಯಾವಹವೆಂದನಾ ಮುನಿಪ ೨೯

ಅರಿದಿಹುದು ನೀನಾಪ್ತ ವಚನವ
ಮರೆಯದಿರು ವೇದೋಕ್ತ ಕರ್ಮದ
ಹೊರಿಗೆ ನಿನ್ನದು ನಿನ್ನ ಹೊದ್ದದು ಕಲುಷ ಕಲಿಮಲದ
ಕರುಬರೀ ಕೌರವರು ಮುಖವಿದು
ಮೆರೆದುದದ್ಭುತವಾಗಿ ನಿನ್ನನು
ಮುರಿವರಲ್ಲದೆ ನಿಮ್ಮವರು ಸೈರಿಸುವರಲ್ಲೆಂದ ೩೦

ನುಡಿಯದಿರಸತ್ಯವನು ರಾಜ್ಯವ
ಬಿಡು ವಿಭಾಡಿಸಿ ನಿನ್ನ ವಧುವಿನ
ಮುಡಿಗೆ ಹಾಯ್ದರೆ ನೀನಧರ್ಮದ ತಡಿಯನಡರದಿರು
ಒಡಲುಗೂಡಿ ಸಮಸ್ತ ಧನವಿದು
ಕೆಡುವುದಗ್ಗದ ಮೋಕ್ಷಲಕ್ಷ್ಮಿಯ
ಮುಡಿಗೆ ಹಾಯ್ವೊಡೆ ಸತ್ಯವೊಂದನೆ ನಂಬು ನೀನೆಂದ ೩೧

ಅಜ್ಞರವದಿರು ನೀವು ನೆರೆ ಸ
ರ್ವಜ್ಞರವದಿರಧರ್ಮನಿಷ್ಠರು
ಯಜ್ಞ ದೀಕ್ಷಿತರಿಂದು ನೀವು ಸಮಸ್ತ ಜಗವರಿಯೆ
ಯಜ್ಞರಿಪುಗಳು ನಿಪುಣರಿಗೆ ವರ
ಯಾಜ್ಞಿಕರಿಗಾಚಾರಹೀನರ
ಭಿಜ್ಞಮತವಿದು ತಪ್ಪದೆಂದನು ಮುನಿ ನೃಪಾಲಂಗೆ ೩೨

ಇದುವೆ ರೇಖಾಮಾತ್ರ ಸರ್ವಾಂ
ಗದಲಿ ನಿನ್ನನು ಮರೆಯದಿರು ಕೊಂ
ಕಿದರೆ ಕರುಣಾಜಲಧಿ ಜೈಸಲುವುಂಟು ಹರಿ ನಿನಗೆ
ಬೆದರದಿರು ವಿಗಡಿಸುವ ವಿಷಯಾ
ಸ್ಪದದೊಳೆಂದು ಮುನೀಂದ್ರನೈವರು
ಸುದತಿ ಸಹಿತನಿಬರಿಗೆ ಬುದ್ಧಿಯ ಹೇಳಿ ಹೊರವಂಟ ೩೩

ಮುನಿಪ ಕಳುಹಿಸಿಕೊಂಡು ಬದರೀ
ವನಕೆ ತಿರುಗಿದನತ್ತಲಿತ್ತಲು
ಜನಪ ಬಂದನು ಬಳಿಕ ಮಯನಿರ್ಮಿತ ಮಹಾಸಭೆಗೆ
ಮುನಿಗಳುಳಿದವರನು ಮಹೀಸುರ
ಜನ ಸಹಿತ ಭೂಪಾಲ ಶೇಷವ
ನನುನಯದಿ ಮಿಗೆ ಸತ್ಕರಿಸಿ ಬೀಳ್ಕೊಟ್ಟನುಚಿತದಲಿ ೩೪

ಅರಸ ಕೇಳ್ಳೈ ಕೌರವೇಂದ್ರನ
ಕರೆಸಿದನು ದುಶ್ಶಾಸನಾದಿಕ
ದುರುಳ ಕೌರವ ಶತಕ ಸಹಿತಲೆ ಸಭೆಗೆ ನಡೆತಂದು
ಪರಿಭವಕೆ ಗುರಿಯಾಗಿ ಹಾಸ್ಯದ
ಹರಹಿನಲಿ ಹಳುವಾಗಿ ಪಾಂಡವ
ರರಸನನು ಬೀಳ್ಕೊಂಡು ಹಸ್ತಿನಪುರಕೆ ಹೊರವಂಟ ೩೫

ಭೂಮಿಲಂಬದ ನಿಖಿಳ ಭೂಪ
ಸ್ತೋಮ ಸಹಿತ ಸುಯೋಧನನು ಹೃ
ತ್ತಾಮಸದ ಚಾವಡಿಯ ಝಾಡಿಯ ರೋಷ ಪಾವಕದ
ಧೂಮಮುಖನೈತಂದು ಗಜಪುರ
ಸೀಮೆಯಲಿ ಪಾಳಯವ ಬಿಡಿಸಿದ
ವೈಮನಸ್ಯದಲಿರುಳು ಹೊಕ್ಕನು ಹಸ್ತಿನಾಪುರವ ೩೬

ಹನ್ನೆರಡನೆಯ ಸಂಧಿ

ಸೂ. ಕಾಲ ಪಾಶಾಕರುಷದಲಿ ಭೂ
ಪಾಲನಿಂದ್ರಪ್ರಸ್ಥ ನಗರಿಯ
ಬೀಳುಕೊಂಡನು ಬಂದು ಹೊಕ್ಕನು ಹಸ್ತಿನಾಪುರವ

ಕೇಳು ಜನಮೇಜಯ ಧರಿತ್ರೀ
ಪಾಲ ಕೌರವ ರಾಯನಿತ್ತಲು
ಮೇಲು ಮುಸುಕಿನ ಹೊತ್ತ ದುಗುಡದ ಹೊಗರ ಹೊಗೆ ಮೊಗದ
ತಾಳಿಗೆಯ ನಿದ್ರ್ರವದ ಮತ್ಸರ
ದೇಳಿಗೆಯಲಿಕ್ಕಡಿಯ ಮನದ ನೃ
ಪಾಲ ಹೊಕ್ಕನು ನಡುವಿರುಳು ನಿಜ ರಾಜಮಂದಿರವ ೧

ಆರತಿಯ ಗಣಿಕೆಯರ ಸುಳಿವು
ಪ್ಪಾರತಿಯ ದಾದಿಯರ ಪಾಯವ
ಧಾರು ಸೂಳಾಯತರ ಮಂಗಳ ವಚನದೈದೆಯರ
ದೂರದಲಿ ನಿಲಿಸಿದನು ಭಂಗದ
ಭಾರಣೆಯ ಬಿಸುಸುಯ್ಲ ಸೂರೆಯ
ಸೈರಣೆಯ ಸೀವಟದ ಸಿರಿ ಮಂಚದಲಿ ಪವಡಿಸಿದ ೨

ಭಾನುಮತಿ ಬರೆ ಮುರಿದ ಮುಸುಕಿನ
ಮೌನಿ ನೂಕಿದನಿರುಳನುದಯದ
ನೂನ ಮಂಗಳ ಪಟಹ ಶಂಖಧ್ವನಿಯ ಮಾಣಿಸಿದ
ಭಾನುವಿಂಗರ್ಘ್ಯಾದಿ ಕೃತ್ಯವ
ನೇನುವನು ಮನ್ನಿಸದೆ ಚಿತ್ತದೊ
ಳೇನ ನೆನೆದನೊ ಭೂಪನಿದ್ದನು ಖತಿಯ ಭಾರದಲಿ ೩

ಬೇಟೆ ನಿಂದುದು ಗಜ ತುರಗದೇ
ರಾಟ ಮಾದುದು ಕೇಳ ಮೇಳದ
ತೋಟಿಯಲ್ಲಿಯದಲ್ಲಿ ಕವಡಿಕೆ ನೆತ್ತ ಮೊದಲಾದ
ನಾಟಕದ ಮೊಗರಂಬವೆನಿಪ ಕ
ವಾಟ ತೆರೆಯದು ಹೊಕ್ಕಸೂಯದ
ಕೋಟಲೆಯ ಕಡುಹೂಟ ಕವರಿತು ನೃಪನ ತನುಮನವ ೪

ದ್ರೋಣ ಭೀಷ್ಮಾದಿಗಳು ಸಮಯವ
ಕಾಣರುಳಿದ ಪಸಾಯ್ತ ಸಚಿವ
ಶ್ರೇಣಿ ಬಾಗಿಲ ಹೊರಗೆ ನಿಂದುದು ಮತ್ತೆ ಮನೆಗಳಲಿ
ಕಾಣೆನೊಳಪೈಕದ ಸುವೇಣಿಯ
ರಾಣಿಯರ ದುರ್ಮನದ ಬೆಳಸಿನ
ಕೇಣಿಯನು ಕೈಕೊಂಡನೊಬ್ಬನೆ ಕೌರವರರಾಯ ೫

ಸಮಯವಿಲ್ಲೋರಂತೆ ಮೌನ
ಭ್ರಮೆಯ ಬಿಗುಹಿನ ಕೇರಿ ಕೇರಿಯ
ಕುಮತಿಗಳ ಗುಜು ಗುಜಿನ ಗುಪ್ತದ ಮುಸುಕುಗೈದುಗಳ
ತಮ ತಮಗೆ ಬಿರುದುಗಳ ಗಣಿಕಾ
ರಮಣ ವೈರದ ಹೆಚ್ಚು ಕುಂದಿನ
ಸಮರ ಭಟರಿರಿದಾಡಿದರು ನಿರ್ನಾಮ ಭಾವದಲಿ ೬

ಸ್ತ್ರೈಣ ಚೇಷ್ಟಿತನೆಂದು ಕೆಲಬರು
ಕಾಣೆವರಸನನೆಂದು ಕೆಲರ
ಕ್ಷೀಣ ರೋಗಿತನೆಂದು ಕೆಲರು ವಿಷ ಪ್ರಯೋಗದಲಿ
ಪ್ರಾಣ ಶೋಷಿತನೆಂದು ಕೆಲಬರು
ಜಾಣೆನೂಹೆಯ ಜನದ ನೆನಹಿನ
ಸಾಣೆಯಲಿ ಸವೆಯಿತ್ತು ಕೌರವ ನೃಪನ ನಿರ್ದೇಶ ೭

ಅಕಟ ಕೌರವರಾಯ ರಾಜ
ನ್ಯಕ ಶಿರೋಮಣಿಯಿರಲು ಧರೆ ರಾ
ಜಕ ವಿಹೀನ ವಿಡಂಬವಾಯ್ತೋ ಶಿವ ಶಿವಾಯೆನುತ
ಸಕಲ ದಳ ನಾಯಕರು ಮಂತ್ರಿ
ಪ್ರಕರ ಚಿಂತಾಂಬುಧಿಯೊಳದ್ದಿರೆ
ಶಕುನಿ ಬಂದನು ಕೌರವೇಂದ್ರನ ರಾಜಮಂದಿರಕೆ ೮

ಕರೆದು ಬಾಗಿಲವರಿಗೆ ತನ್ನಯ
ಬರವನರುಹಿಸಲವರು ರಾಯನ
ಹೊರೆಗೆ ಬಂದರು ನುಡಿದರಂಗೈ ತಳದ ಬಾಯ್ಗಳಲಿ
ಅರಸ ಬಿನ್ನಹ ಮಾವದೇವರು
ದರುಶನಾರ್ಥಿಗಳೆನಲು ಮನದಲಿ
ಕುರು ನೃಪತಿ ಚಿಂತಿಸುತ ಬರಹೇಳೆಂದು ನೇಮಿಸಿದ ೯

ಹೊಕ್ಕನೀತನು ಕೌರವೇಂದ್ರನ
ನೆಕ್ಕಟಿಯೊಳಿರೆ ಕಂಡು ನುಡಿಸಿದ
ನಕ್ಕಜದ ರುಜೆಯೇನು ಮಾನಸವೋ ಶರೀರಜವೊ
ಮುಕ್ಕುಳಿಸಿ ಕೊಂಡಿರದಿರಾರಿಗೆ
ಸಿಕ್ಕಿದಿಯೊ ಸೀಮಂತಿನಿಯರಿಗೆ
ಮಕ್ಕಳಾಟಿಕೆ ಬೇಡ ನುಡಿ ಧೃತರಾಷ್ಟ್ರನಾಣೆಂದ ೧೦

ಮಾವ ನೀವ್ ಮರುಳಾದಿರೇ ನನ
ಗಾವ ರುಜೆಯಿಲ್ಲಂಗನೆಯರುಪ
ಜೀವಿಯೇ ನೀವರಿಯಿರೇ ಹಿಂದೀಸು ಕಾಲದಲಿ
ನೋವು ಬೇರಿಲ್ಲೆನಗೆ ನಿಳಯಕೆ
ನೀವು ಬಿಜಯಂಗೈವುದಂತ
ರ್ಭಾವ ವಹ್ನಿಯನೇಕೆ ಬೆದಕುವಿರೆಂದನಾ ಭೂಪ ೧೧

ಏನು ನಿನ್ನಂತಸ್ಥ ಹೃದಯ ಕೃ
ಶಾನು ಸಂಭವವೇಕೆ ನುಡಿ ದು
ಮ್ಮಾನ ಬೇಡೆನ್ನಾಣೆನುತ ಸಂತೈಸಿದನು ನೃಪನ
ಏನು ಭಯ ಬೇಡೆಂದೆನಲು ಯಮ
ಸೂನು ವೈಭವ ವಹ್ನಿದಗ್ಧ ಮ
ನೋನುಭಾವವನೇಕೆ ನುಡಿಸುವಿರೆಂದನಾ ಭೂಪ ೧೨

ಹೇಳು ಹೇಳೇನೇನು ಪಾಂಡು ನೃ
ಪಾಲ ಪುತ್ರರ ವಿಭವ ವಹ್ನಿ
ಜ್ವಾಲೆಯಲಿ ಮನ ಬೆಂದುದೇ ಹರಹರ ವಿಚಿತ್ರವಲ
ಪಾಲಕನು ಧರ್ಮಜನು ಸಲೆ ಕ
ಟ್ವಾಳುಗಳು ಭೀಮಾರ್ಜುನರು ಬೆ
ಳ್ಳಾಳ ಹಬ್ಬುಗೆಯೈಸಲೇ ಪಾಂಡವರ ಸಿರಿಯೆಂದ ೧೩

ಅವರು ಪಿತ್ರಾರ್ಜಿತದ ರಾಜ
ಪ್ರವರ ಪಾತ್ರರು ನಿನ್ನಸೂಯೆಯ
ಕವಲು ಮನದ ಕುಠಾರ ಬುದ್ಧಿಯ ಕಲುಷ ಭಾವನೆಯು
ವಿವರಣೆಯನವರೆತ್ತ ಬಲ್ಲರು
ಶಿವ ಶಿವಾ ಭುವನೈಕ ಮಾನ್ಯರ
ನವಗಡಿಸಲಂಗೈಸಿದೈ ಮಾಣೆಂದನಾ ಶಕುನಿ ೧೪

ಲೇಸು ಬಿಜಯಂಗೈಯಿ ನೀವೆ
ನ್ನಾಸರಾಗ್ನಿಯನೇಕೆ ಕೆಣಕುವಿ
ರಾಸುರವಿದೇಕೆನ್ನೊಡನೆ ಸೈರಿಸುವುದುಪಹತಿಯ
ಈಸು ನುಡಿವರೆ ಮಾವಯೆನುತ ಮ
ಹೀಶ ಕಂಬನಿದುಂಬಿ ನೆನೆಹಿನ
ಬೇಸರಕೆ ಬಿಸುಸುಯ್ದು ಧೊಪ್ಪನೆ ಕೆಡದನವನಿಯಲಿ ೧೫

ಎತ್ತಿದನು ಕಣ್ಣೆವೆಯ ಕಿರುವನಿ
ಮುತ್ತುಗಳ ಕೇವಣಿಯ ಶಕುನಿ ನೃ
ಪೋತ್ತಮನೆ ಬಾ ಕಂದ ಬಾಯೆಂದಪ್ಪಿ ಕೌರವನ
ಕಿತ್ತು ಬಿಸುಡುವೆನಹಿತರನು ನಿನ
ಗಿತ್ತೆನಿಂದ್ರಪ್ರಸ್ಥಪುರವನು
ಹೆತ್ತ ತಾಯ್ ಗಾಂಧಾರಿ ಸಂತೋಷಿಸಲಿ ಬಳಿಕೆಂದ ೧೬

ಮಾವ ಕೇಳತಿ ಬಲರು ಫಲುಗುಣ
ಪಾವಮಾನಿಗಳೈವರಿಗೆ ತಾ
ಜೀವಸಖ ಗೋವಿಂದನನಿಬರ ಗೆಲವು ಗೋಚರವೆ
ಸಾವುದಲ್ಲದೆ ತನಗೆ ಬೇರಿ
ನ್ನಾವ ಪರಿಯಲಿ ಸಮತೆ ಸೇರದು
ಜೀವಿತವ್ಯವನಮರ ನಿಕರದೊಳರಸಿಕೊಳ್ಳೆಂದ ೧೭

ಗೆಲುವೆ ನಾನಂಜದಿರು ಪಾಂಡವ
ರಳವಳವ ನಾನರಿವೆ ನೃಪನ
ಗ್ಗಳದ ಧರ್ಮಜ್ಞನು ವಿಶೇಷ ದ್ಯೂತಲೋಲುಪನು
ಗೆಲುವ ಮೋಡಿಯನರಿಯನಾತನ
ನೆಲೆಯ ಬಲ್ಲೆನು ಜೂಜುಗಾರರ
ಕುಲ ಶಿರೋಮಣಿ ತಾನೆಯೆಂದನು ಶಕುನಿ ಕೌರವಗೆ ೧೮

ಕಪಟವನು ನೆರೆ ಮಾಡಿ ಜೂಜಿನೊ
ಳುಪರಿಕಾರ್ಯವ ಜೈಸಿ ಕೊಡುವೆನು
ನಿಪುಣರೆನ್ನಂದದಲಿ ಲೋಕದೊಳಿಲ್ಲ ಕೈತವದ
ಅಪದೆಸೆಗೆ ಭಯಗೊಳ್ಳದಿರು ನಿ
ಷ್ಕೃಪೆಯಲಿರು ಗುರು ಭೀಷ್ಮ ವಿದುರಾ
ದ್ಯಪಸರರ ಕೈಕೊಳ್ಳದಿರು ನೀನೆಂದನಾ ಶಕುನಿ ೧೯

ಎನ್ನ ಬಹುಮಾನಾವಮಾನವು
ನಿನ್ನದೈಸಲೆ ಮಾವ ನೀ ಸಂ
ಪನ್ನ ಕೃತ್ರಿಮ ವಿದ್ಯನಾದರೆ ತೊಡಚು ಸಾಕದನು
ಅನ್ನಿಗರಿಗರುಹದಿರು ನಮ್ಮವ
ರೆನ್ನದಿರು ವಿದುರಾದಿಗಳನುಪ
ಪನ್ನ ಮಂತ್ರವನರುಹು ಬೊಪ್ಪಂಗೆಂದನವನೀಶ ೨೦

ನೀನರುಹು ನಿಮ್ಮಯ್ಯ ಮನಗೊ
ಟ್ಟಾ ನರೇಂದ್ರರ ಕರೆಸಿ ಕೊಟ್ಟರೆ
ಮಾನನಿಧಿಯೇ ಸಕಲ ಧರೆಯನು ಸೇರಿಸುವೆ ನಿನಗೆ
ನೀನೆ ಹೋಗಿಯೆ ನಿನ್ನ ಕಡು ದು
ಮ್ಮಾನವನು ಬೊಪ್ಪಂಗೆ ನುಡಿದರೆ
ತಾನೆ ಕರೆಸುವನರುಹುವೆನು ಜನಕಂಗೆ ನಿಜಮತವ ೨೧

ಅಹುದು ಬಳಿಕೇನೆನುತ ಬಂದನು
ಕುಹಕಮತಿ ಧೃತರಾಷ್ಟ್ರನರಮನೆ
ಗಿಹ ಸಮಯದಲಿ ಹೊಕ್ಕನಂದೇಕಾಂತ ಮಂದಿರವ
ಬಹಳ ಖೇದ ವ್ಯಸನದಲಿ ದು
ಸ್ಸಹ ಮನೋವ್ಯಥೆಯಲಿ ಕುಮಾರಕ
ನಿಹುದನರಿಯಿರೆ ನೀವೆನುತ ಬಿಸುಸುಯ್ದನಾ ಶಕುನಿ ೨೨

ಏನು ಶಕುನಿ ಮಗಂಗೆ ದುಗುಡವ
ದೇನು ಕಾರಣವಾರ ದೆಸೆಯಿಂ
ದೇನಸಾಧ್ಯವದೇನು ಭಯ ಮೇಣಾವುದಭಿಲಾಷೆ
ಏನುವನು ವಂಚಿಸದೆ ಹೇಳೆ
ನ್ನಾನೆಗೇಕೈ ಮರುಕವೆನೆ ನಿಜ
ಸೂನುವನು ನೀ ಕರೆಸಿ ಬೆಸಗೊಳ್ಳೆಂದನಾ ಶಕುನಿ ೨೩

ಕರೆಸಿದನು ದುರಿಯೋಧನನನಾ
ದರಿಸಿ ಕಟ್ಟೇಕಾಂತದಲಿ ಮು
ವ್ವರು ವಿಚಾರಿಸಿದರು ನಿಜಾನ್ವಯ ಮೂಲ ನಾಶನವ
ಭರತಕುಲ ನಿರ್ವಾಹಕನೆ ಬಾ
ಕುರುಕುಲಾನ್ವಯದೀಪ ಬಾ ಎ
ನ್ನರಸ ಬಾ ಎನ್ನಾನೆ ಬಾಯೆಂದಪ್ಪಿದನು ಮಗನ ೨೪

ದುಗುಡವೇಕೈ ಮಗನೆ ಹಿರಿಯೋ
ಲಗವನೀಯೆ ಗಡೇಕೆ ವೈಹಾ
ಳಿಗಳ ಬೇಟೆಗಳವನಿಪಾಲ ವಿನೋದ ಕೇಳಿಗಳ
ಬಗೆಯೆ ಗಡ ಬಾಂಧವರ ಸಚಿವರ
ಹೊಗಿಸೆ ಗಡ ನಿನ್ನರಮನೆಯನೀ
ಹಗಲು ನಿನಗೇಕಾಯ್ತು ಕತ್ತಲೆಯೆಂದನಂಧನೃಪ ೨೫

ಹೇಳಲಮ್ಮೆನು ನೀವು ಧರ್ಮದ
ಕೊಳಿಯಲಿ ಸಿಲುಕಿದವರೆನ್ನನು
ಖೂಳನೆಂಬಿರಿ ಕಷ್ಟನೆಂಬಿರಸೂಯನೆಂಬಿರಲೆ
ಸಾಲ ಭಂಜಿಕೆಯಾಯ್ತು ತನ್ನಯ
ಬಾಳಿಕೆಯ ಬೇಳಂಬವೇತಕೆ
ಕೇಳುವಿರಿ ನೀವೆಂದು ಸುಯ್ದನು ತುಂಬಿ ಕಂಬನಿಯ ೨೬

ಮುನಿಚರಿತ್ರರು ನೀವು ರಾಜಸ
ತನದ ಮದದಲಿ ಲೋಕಯಾತ್ರೆಯ
ನನುಸರಿಸುವವರಾವು ನೀವೇ ಭೋಗ ನಿಸ್ಪೃಹರು
ಅನುದಿವಸ ರಾಗಿಗಳು ನಾವೆ
ಮ್ಮನುಮತವ ಪಾಲಿಸುವರಾರೆಂ
ದೆನುತ ಸುಯ್ದನು ಮರುಗಿ ಬೈದನು ತನ್ನ ದುಷ್ಕೃತವ ೨೭

ಈಸು ಕಳವಳವೇನು ಚಿತ್ತದ
ಬೈಸಿಕೆಗೆ ಡೊಳ್ಳಾಸವೇಕೆ ವಿ
ಳಾಸಕೂಣೆಯವೇನು ಹೇಳಾ ನೆನಹಿನಭಿರುಚಿಯ
ವಾಸಿಗಳ ಪೈಸರವನೆನ್ನಲಿ
ಸೂಸಬಾರದೆ ನಿನ್ನ ಹರುಷಕೆ
ಪೈಸರವದೇನೆಂದು ಬೆಸಗೊಂಡನು ಸುಯೋಧನನ ೨೮

ಏನನೆಂಬೆನು ಬೊಪ್ಪ ಕುಂತೀ
ಸೂನುಗಳ ಸಾಮರ್ಥ್ಯಪಣವನು
ದಾನವಾರಿಯ ಹಾಸು ಹೊಕ್ಕಿನ ಸೌಖ್ಯ ಸಂಗತಿಯ
ತಾ ನಪುಂಸಕನಾದ ಪರಿಯನ
ದೇನ ವಿಸ್ತರಿಸುವೆನು ಲಜ್ಜಾ
ಮಾನಿನಿಗೆ ತನ್ನೊಕ್ಕತನವಿಂದಿಳಿದು ಹೋಯ್ತೆಂದ ೨೯

ನೆಗೆದ ಬುಗುಟದೆ ಹಣೆಯಲವರೋ
ಲಗದ ಸಭೆಯಲಿ ನನೆದ ಸೀರೆಯ
ತೆಗೆಸಿ ಕೊಟ್ಟರು ತಮ್ಮ ಮಡಿವರ್ಗದ ನವಾಂಬರವ
ಬೆಗಡುಗೊಳಿಸಿದರೆನ್ನನವರೋ
ಲಗದ ಸೂಳೆಯರವರ ಸೂಳಿನ
ನಗೆಯ ನೆನೆ ನೆನೆದೆನ್ನ ಮನ ಜರ್ಝರಿತವಾಯ್ತೆಂದ ೩೦

ಇದಕೆ ಕಾರಣವೇನು ಹಣೆ ನೊಂ
ದುದಕದೇನು ನಿಮಿತ್ತವೆನಲಾ
ಸದನದಲಿ ಮಯನಿತ್ತ ಸಭೆಯನು ದೇವರರಿಯಿರಲೆ
ಮುದದಿನಾ ಧರ್ಮಜನು ಘನ ಸಂ
ಪದದಲೋಲಗವಿತ್ತನಾ ದ್ರೌ
ಪದಿ ನಿಜಾನುಜ ಮಂತ್ರಿ ಸಚಿವ ಪಸಾಯಿತರು ಸಹಿತ ೩೧

ಆ ಮಹಾಸಭೆ ದೇವ ನಿರ್ಮಿತ
ರಾಮಣೀಯಕ ವಿವಿಧ ರತ್ನ
ಸ್ತೋಮ ತೇಜಃ ಪುಂಜ ಭಂಜಿತ ನಯನ ವೀಧಿಯಲಿ
ಸಾಮದಲಿ ನಮ್ಮನು ಯುಧಿಷ್ಠಿರ
ಭೂಮಿಪತಿ ಕರೆಸಿದನು ತನ್ನು
ದ್ದಾಮ ವಿಭವವನೆನಗೆ ತೋರಲು ತತ್ಸಭಾಸ್ಥಳಕೆ ೩೨

ಹರಟಿನಲಿ ಹಿರಿದಾಯ್ತು ಕಂದಾ
ವರೆಯ ವನ ಬೇರೊಂದು ತಾಣದೊ
ಳುರವಣೆಯ ಬೆಳದಿಂಗಳೌಕಿದುದೊಂದು ತಾಣದಲಿ
ಹರಿವ ಯಮುನಾ ನದಿಯನಲ್ಲಿಗೆ
ತರಸಿದವರಾರೆನಲು ಮಣಿ ಬಂ
ಧುರದ ಬೆಳಗಿನ ಲಹರಿ ಮುರಿದುದು ತನ್ನ ಜಾಣುಮೆಯ ೩೩

ಹೊಕ್ಕ ಸಾಲಲಿ ಹೊಳೆವ ಮಣಿರುಚಿ
ಮುಕ್ಕುಳಿಸಿದವು ಕಂಗಳನು ನಡೆ
ದಿಕ್ಕಲನ ನೋಡಿದರೆ ಮುರಿದೊಳಸರಿದವಾಲಿಗಳು
ಉಕ್ಕುವಮಲಚ್ಛವಿಗಳಲಿ ಮನ
ಸಿಕ್ಕಿ ಹೊಲಬಳಿದುದು ವಿವೇಕವ
ಡೊಕ್ಕರಸಿ ಕೆಡಹಿದವು ಬಹುವಿಧ ರತ್ನಕಾಂತಿಗಳು ೩೪

ಹಿಡಿದವೆನ್ನೂಹೆಯನು ಮಣಿ ರುಚಿ
ಯೆಡತರದೊಳಿಕ್ಕಿದವು ಭಿತ್ತಿಯ
ಬಿಡೆಯದಲಿ ಝಳಪಿಸುವ ನೀಲದ ಲಳಿಯ ಲಹರಿಯಲಿ
ತಡಿಯ ಕಾಣೆನು ತಳಿತ ಕಾಂತಿಯ
ಕಡಲ ವಿಮಲ ಸ್ಫಟಿಕ ಜಲದಲಿ
ಮಿಡುಕಲಂಜಿದವಂಘ್ರಿಗಳು ನರನಾಥ ಕೇಳೆಂದ ೩೫

ಸ್ಥಳವೆ ಜಲರೂಪದಲಿ ಜಲವೇ
ಸ್ಥಳದ ಪಾಡಿನಲಿದ್ದುದದು ಕೆಲ
ಬಲನ ಭಿತ್ತಿಯ ಕಂಬ ಕಂಬದ ನಡುವೆ ಭಿತ್ತಿಗಳು
ಹೊಳಹನೇ ಕಂಡೆನು ವಿವೇಕದ
ಕಳಿವು ಚಿತ್ತದ ಸೆರೆದುಹಾರದೊ
ಳಿಳಿದವಕ್ಷಿಗಳಿಂತು ಸೋತೆನು ತಂದೆ ಕೇಳೆಂದ ೩೬

ಮುಂದೆ ವಿಮಲ ಸ್ಫಟಿಕ ಭೂಮಿಯ
ದೊಂದು ಠಾವಿನೊಳೀಕ್ಷಿಸುತೆ ಕೊಳ
ನೆಂದು ಬಗೆದೆನು ನಿಂದು ಸಂವರಿಸಿದೆನು ಮುಂಜೆರಗ
ಅಂದು ದ್ರೌಪದಿ ಸಹಿತ ನಾರೀ
ವೃಂದ ಕೈಗಳ ಹೊಯ್ದು ಮಿಗೆ ಗೊ
ಳ್ಳೆಂದು ನಕ್ಕುದು ನೊಂದು ತಲೆವಾಗಿದೆನು ಲಜ್ಜೆಯಲಿ ೩೭

ಊಹೆಯಲಿ ತಡವರಿಸಿ ಹೆಜ್ಜೆಯ
ಗಾಹುಗತಕದೊಳಿಡುತ ಕಾಂತಿಯ
ಸೋಹೆಯರಿಯದೆ ಬೀದಿಯಲಿ ಕಂಡೆನು ಸರೋವರವ
ಆ ಹರಿಬವನು ಮುರಿವೆನೆಂದಿದ
ನೂಹಿಸದೆ ನಾ ಸ್ಫಟಿಕವೆಂದು
ತ್ಸಾಹಿಸಲು ನೀರಾಯ್ತು ನನೆದೆನು ನಾಭಿದಘ್ನದಲಿ ೩೮

ಮತ್ತೆ ಗೊಳ್ಳೆಂದುದು ನೃಪಾಲನ
ಮತ್ತ ಕಾಶಿನಿಯರು ಯುಧಿಷ್ಠಿರ
ನಿತ್ಯದಿವ್ಯ ದುಕೂಲವನು ತಡಿಗಡರಿ ತೊಡಚಿದೆನು
ಬತ್ತಿತೆನ್ನಭಿಮಾನ ಜಲನಿಧಿ
ಮತ್ತೆ ಮಾರಿಯ ಮುಸಕವನು ನೀ
ವ್ಚಿತ್ತವಿಸಿರೇ ಬೊಪ್ಪಯೆಂದನು ಕೌರವರ ರಾಯ ೩೯

ನಂಬಿಸಿದುದೊಂದೆಡೆಯ ಬಾಗಿಲು
ಬಿಂಬಿಸಿತು ಭಿತ್ತಿಯಲಿ ತತ್ಪ್ರತಿ
ಬಿಂಬವೆಂದಾನರಿಯದೊಡ ಹಾಯಿದೆನು ಚೌಕಿಗೆಯ
ಎಂಬೆನೇನನು ಹೊರಳಿ ನಗುವ ನಿ
ತಂಬಿನಿಯರನು ಭೀಮ ಪಾರ್ಥರ
ಡಂಬರವ ಕಂಡಸುವ ಹಿಡಿದೆನು ನೋಡಿಕೊಳ್ಳೆಂದ ೪೦

ನೊಂದುದೇ ಹಣೆ ಮನದೊಳಗೆ ಕಡು
ನೊಂದೆನವದಿರ ನಗೆಗೆ ನಡೆದೆನು
ಮುಂದಣೋವರಿ ಬಾಗಿಲನು ಕಂಡೆನ್ನ ಮನದೊಳಗೆ
ಹಿಂದೆ ಹೇರಿದ ಭಂಗವೇ ಸಾ
ಕೆಂದು ಸುಪ್ರೌಢಿಯಲಿ ಬಾಗಿಲ
ನೊಂದು ಠಾವಿನೊಳರಸಿ ತಡವರಿಸಿದೆನು ಭಿತ್ತಿಗಳ ೪೧

ನಗೆಗೆ ನಗೆ ಕುಂಟಣಿ ವಿವೇಕದ
ಹೊಗೆಗೆ ಹೊಗೆ ಸಖಿಯಾದುದಲ್ಲಿಯ
ಹಗರಣಿಗ ನಾನಾದೆನದು ನೋಟಕದು ಜನವಾಯ್ತು
ನಗುವವರ ಜರೆದನೆ ಯುಧಿಷ್ಠಿರ
ನಗೆಯ ಮರೆದನೆ ಬೊಪ್ಪ ನಿಮ್ಮಯ
ಮಗನವಸ್ಥಾರೂಪವಿದು ಚಿತ್ತವಿಸಿ ನೀವೆಂದ ೪೨

ಒಡ್ಡವಿಸಿತೆನ್ನಾಟ ನಗೆಯೊಳ
ಗಡ್ಡ ಬಿದ್ದಳು ಪಾಂಡುಪುತ್ರರ
ಬೊಡ್ಡಿ ಬಿಂಕದಲವರು ಬಿರಿದರು ಭೀಮ ಫಲಗುಣರು
ಖಡ್ಡಿ ಗರುವೆನ್ನಿಂದ ರೋಷದ
ಗೊಡ್ಡು ನಾನಾದೆನು ವಿಘಾತಿಯ
ಬಡ್ಡಿಗಿನ್ನಕ ಬದುಕಿದೆನು ಧೃತರಾಷ್ಟ್ರ ಕೇಳೆಂದ ೪೩

ಸಿಂಗಿಯನು ಬಿತ್ತಿದೆನು ಪಾಂಡವ
ರಂಗದಲಿ ತತ್ಫಲದ ಬೆಳಸಿನ
ಸಿಂಗಿಯಲಿ ತಾ ಸಾವೆನಲ್ಲದೊಡಗ್ನಿ ಕುಂಡದಲಿ
ಭಂಗಿಸುವೆನಾ ಫಲದೊಳೆನ್ನನು
ನುಂಗಬೇಹುದು ವಹ್ನಿ ಮೇಣೀ
ಗಂಗೆಯಲಿ ಬಿದ್ದೊಡಲ ನೀಗುವೆನೆನುತ ಬಿಸುಸುಯ್ದ ೪೪

ಆ ಯುಧಿಷ್ಠಿರ ಸಹಿತ ನೀನೇ
ರಾಯನಾಗಿರು ಮೇಣು ನಿಮ್ಮೀ
ತಾಯಿ ಸಂತಸಬಡಲಿ ದುಶ್ಶಾಸನನ ಪಟ್ಟದಲಿ
ರಾಯತನವೆಮಗಿಂದ್ರ ಲೋಕದ
ಲಾಯದಲಿ ದಿಟವೆಂದು ನುಡಿವರು
ಜೋಯಿಸರು ಸಾಕವರ ವಚನ ನಿರರ್ಥವಲ್ಲೆಂದ ೪೫

ಪುರದಲೆಂಬತ್ತೆಂಟು ಸಾವಿರ
ಧರಣಿಯಮರರು ನಿತ್ಯ ಪಡೆಯುವ
ರರಸ ಕೇಳ್ಳೆ ಹತ್ತು ಸಾವಿರ ಹೊನ್ನತಳಿಗೆಯಲಿ
ವರ ಯತೀಶರು ಹತ್ತು ಸಾವಿರ
ವರಮನೆಯೊಳುಂಬುದು ನೃಪಾಲಾ
ಧ್ವರದ ಸಿರಿಯನು ನೀವೆ ಕಂಡಿರೆಯೆಂದನಾ ಭೂಪ ೪೬

ಕೇಳಿದನು ಬಿಸು ಸುಯ್ದು ಸಕಟ ವಿ
ಕಾಳಿಸಿತೆ ಕೌರವನ ಬುದ್ಧಿ ವಿ
ಟಾಳ ಸಂಗತಿಯಾಯ್ತಲಾ ಪಿಸುಣಾರ ಕೆರಳಿಚದು
ಕೇಳು ಮಗನೇ ಧರ್ಮಪುತ್ರನ
ಮೇಲೆ ಮುನಿವರೆ ರಾಜಋಷಿ ನರ
ಪಾಲ ಮಾತ್ರವೆ ಶಿವ ಮಹಾದೇವೆಂದನಾ ಭೂಪ ೪೭

ಸತಿಯರಲಿ ನಿಮ್ಮವ್ವೆ ಸುಪತಿ
ವ್ರತೆ ಮಹಾಖಳ ನೀನು ಬೀಜ
ಸ್ಥಿತಿಯಲೂಣಯವಿಲ್ಲ ನಿನ್ನಯ ಬುದ್ಧಿ ದೋಷವಿದು
ಕೃತಕವೋ ಸಹಜವೋ ನವೀನ
ಸ್ಥಿತಿಯ ಕಂಡೆನು ಶಿವ ಶಿವಾ ದು
ರ್ಮತಿಗಳಾವುದ ನೆನೆಯರೆಂದನು ಸುಯ್ದು ಧೃತರಾಷ್ಟ್ರ ೪೮

ಪಾಂಡುವಿನ ಮಕ್ಕಳುಗಳಾರಾ
ಪಾಂಡುವಿನಲೆನ್ನಲ್ಲಿ ಭೇದವ
ಕಂಡೆಲಾ ನೀನವರಿಗೇನಪ್ರಾಪ್ತವೇ ಧರಣಿ
ಉಂಡು ಬದುಕುವ ಬಹಳ ಭಾಗ್ಯರ
ಕಂಡಸೂಯಂಬಡುವ ಖಡ್ಡರ
ಭಂಡರೆನ್ನದೆ ಲೋಕ ನಿನಗಿದು ಸಾಮ್ಯವಲ್ಲೆಂದ ೪೯

ಅಹುದು ಬೊಪ್ಪ ವೃತಾಭಿಮಾನದ
ಕುಹಕಿ ಹೋಗಲಿ ನಿಮ್ಮ ಚಿತ್ತಕೆ
ಬಹ ಕುಮಾರರ ಕೂಡಿ ನಡೆವುದು ಪಾಂಡು ನಂದನರ
ಮಹಿಯ ಹಂಗಿಂಗೋಸುಗವೆ ಬಿ
ನ್ನಹವ ಮಾಡಿದೆನೆನಗೆ ಭಂಡಿನ
ರಹಣಿ ಬಂದುದು ಸಾಕಲೇ ಸೊಗಸಾಯ್ತು ಲೇಸೆಂದ ೫೦

ತಾಯೆ ನೇಮುವಗೊಂಡೆನಯ್ಯಂ
ಗಾ ಯುಧಿಷ್ಠಿರನಾತ್ಮಜನಲೇ
ವಾಯುಸುತ ನರ ನಕುಲ ಸಹದೇವರು ಕುಮಾರರಲೆ
ಈ ಯುಗದಲಿನ್ನವರ ಸಂತತಿ
ದಾಯ ಭಾಗಿಗಳಾಗಿ ಬದುಕಲಿ
ರಾಯರಿಲ್ಲಾ ಮತ್ತೆ ನಮ್ಮನು ರಕ್ಷಿಸುವರೆಂದ ೫೧

ಅರಸ ಧರ್ಮಿಷ್ಠನು ಯುಧಿಷ್ಠಿರ
ಧರಣಿಪತಿಯುತ್ತಮನು ಪವನಜ
ನರರು ವಿನಯಾನ್ವಿತರು ನೀವೇ ಪುತ್ರವತ್ಸಲರು
ಧರಣಿಗಾವಿನ್ನೈಸಲೇ ನೂ
ರ್ವರು ಕುಮಾರರು ಹೊರಗೆ ನಿಮ್ಮಯ
ಕರುಣವೇ ಸಾಮ್ರಾಜ್ಯ ನಮ್ಮನು ಬೀಳುಗೊಡಿರೆಂದ ೫೨

ಆಯು ಛಲವಭಿಮಾನ ಹೋಗಲಿ
ಕಾಯಬೇಕೆಂಬರೆ ನೃಪಾಲರ
ಬಾಯ ತಂಬುಲ ತಿಂದು ಹೊರೆವೆವು ಬೆಂದ ಬಸುರುಗಳ
ಆಯು ಛಲವಾಚಂದ್ರತಾರಕ
ಕಾಯವಧ್ರುವವೆಂಬಡಿದಕೆ ಸ
ಹಾಯವಿದೆಲಾ ಕಾಲಕೂಟ ಕಠೋರ ನದಿಯೆಂದ ೫೩

ಅರಸನಭ್ಯುದಯುವನು ಭೀಮನ
ಧರಧುರವನರ್ಜುನನ ಬಿಂಕವ
ನರಸಿಯಾಟೋಪವನು ಮಾದ್ರೀಸುತರ ಸಂಭ್ರಮವ
ಹೊರೆಯ ಧೃಷ್ಟದ್ಯುಮ್ನ ದ್ರುಪದಾ
ದ್ಯರ ವೃಥಾಡಂಬರವ ಕಂಡೆದೆ
ಬಿರಿದುದಳುಕಿದೆನಳುಕಿದೆನು ಸಂತವಿಸಲರಿದೆಂದ ೫೪

ಕರಗಿದಳು ಗಾಂಧಾರಿ ಕಂಬನಿ
ದುರುಗಲಲಿ ಧೃತರಾಷ್ಟ್ರನೆದೆ ಜ
ರ್ಝರಿತವಾದುದು ಮಗನ ಮಾತಿನ ಮುಸಲ ಹತಿಗಳಲಿ
ಸುರಿವ ನಯನಾಂಬುಗಳ ಮೂಗಿನ
ಬೆರಳ ತೂಗುವ ಮಕುಟದವನೀ
ಶ್ವರನು ಮೌನದೊಳಿದ್ದನೊಂದು ವಿಗಳಿಗೆ ಮಾತ್ರದಲಿ ೫೫

ಮಾತು ಸೊಗಸದಲಾ ವೃಥಾ ನೀ
ವೇತಕೆನ್ನನು ಕರೆಸಿದಿರಿ ನಿ
ಮ್ಮಾತಗಳು ಭೀಮಾರ್ಜುನರು ಸಹಿತೀ ಮಹೀತಳವ
ತಾತ ನೀವಾಳುವುದು ತಾಯೆ ಸು
ನೀತನಾ ಧರ್ಮಜನು ಧರ್ಮ ವಿ
ಘಾತಕರು ನಾವೆಮ್ಮ ಕಳುಹುವುದೆನುತ ಹೊರವಂಟ ೫೬

ಎಲೆಗೆ ಕರೆಯಾ ಪಾಪಿ ಕೌರವ
ಕುಲ ಕುಠಾರನ ನಿನ್ನ ಮಗನೊಡ
ನಳಿವೆನೈಸಲೆ ಪಾಂಡುಪುತ್ರರ ವೈರ ಬಂಧದಲಿ
ತಿಳುಹಿ ತಾಯೆನಲಾಕೆ ಶಕುನಿಯ
ಕಳುಹಿ ಕರೆಸಿದಡಾತ ಮರಳಿದ
ನಳಲು ದೊರೆಯಲಿ ಮೂಡಿ ಮುಳುಗಿದನಂದು ಧೃತರಾಷ್ಟ್ರ ೫೭

ಏನ ನೆನೆದೈ ಮಗನೆ ಕುಂತೀ
ಸೂನುಗಳ ರಾಜ್ಯಾಪಹಾರದೊ
ಳೇನು ಬುದ್ಧಿ ವಿಳಾಸವಾವುದು ಕಾರ್ಯಗತಿ ನಿನಗೆ
ದಾನದಲಿ ಮೇಣ್ ಸಾಮದಲಿ ಭೇ
ದಾನುಮತದಲಿ ದಂಡದಲಿ ನೀ
ವೇನ ನಿಶ್ಚೈಸಿದಿರಿ ಹೇಳಿನ್ನಂಜಬೇಡೆಂದ ೫೮

ತಿಂದ ವಿಷವಳ್ಕಿದವು ಮಡುವಿನೊ
ಳಂದು ಬಿಸುಟರೆ ಮುಳುಗಿ ಸುಖದಲಿ
ಮಿಂದು ಹೊರವಂಟರು ಮಹಾಗ್ನಿಯ ಭವನ ಭಂಗದಲಿ
ಒಂದು ಕೂದಲು ಸೀಯದನಿಬರು
ಬಂದರಿವು ಮೊದಲಾದ ಕೃತ್ರಿಮ
ದಿಂದ ಪಾಂಡವರಳಿದುದಿಲ್ಲಿದಕೇನು ಹದನೆಂದ ೫೯

ನೀವು ಚಿತ್ತವಿಸಿದೊಡೆ ನೆತ್ತದೊ
ಳಾವು ಸೋಲಿಸಿ ಕೊಡುವೆವವರನು
ನೀವು ಕರೆಸುವುದಿಲ್ಲಿಗುಚಿತ ಪ್ರೀತಿವಚನದಲಿ
ನಾವು ಜಾಣರು ಜೀಯ ಜೂಜಿನ
ಜೀವ ಕಲೆಯಲಿ ಧರ್ಮ ಸುತನಿದ
ನಾವ ಹವಣೆಂದರಿಯನಾತನ ಜಯಿಸಬಹುದೆಂದ ೬೦

ಅಹುದು ತಪ್ಪೇನಿಮುವೆ ಸಾಧನ
ವಹುದು ವಿದುರನ ಬುದ್ಧಿ ಗಭಿಮತ
ವಹಡೆ ಕರೆಸುವೆವೈಸಲೇ ಬೆಸಸುವೆನು ವಿದುರಂಗೆ
ಕುಹಕವಾತನಲಿಲ್ಲ ನೋಡುವ
ನಿಹಪರತ್ರದ ಹಿತವನಿದ ನಿ
ರ್ವಹಿಸಿ ಕೊಡುವರೆ ಮಂತ್ರವೆಂದನು ಮಗಗೆ ಧೃತರಾಷ್ಟ್ರ ೬೧

ಖೂಳರಲಿ ಸತ್ಕಥೆಗಳನು ನೆರೆ
ಕೇಳದವರಲಿ ಮಂತ್ರ ಬೀಜವ
ನಾಲಿಯಿಲ್ಲದವಂಗೆ ರೂಪು ವಿಲಾಸ ವಿಭ್ರಮವ
ಹೇಳುವಂತಿರೆ ನಿಮ್ಮ ವಿದುರನ
ಕೇಳಿಸಿದರಾ ಕಾರ್ಯಗತಿಗೆ ವಿ
ತಾಳವಾಗದೆ ಬೊಪ್ಪಯೆಂದನು ನಗುತ ಕುರುರಾಯ ೬೨

ಅರುಹಿದರೆ ವಿದುರಂಗೆ ಕಾರ್ಯವ
ಮುರಿವನಾತನು ಬಳಿಕ ನಿಮ್ಮಯ
ಕಿರಿಯ ತಮ್ಮನ ಮಕ್ಕಳಿಗೆ ಕೊಡಿ ಹಸ್ತಿನಾಪುರವ
ಹರಕುಗಳು ನಾವ್ ನೂರು ಮಕ್ಕಳು
ಹೊರಗೆ ಬದುಕುವೆವೈಸಲೇ ನಿ
ಮ್ಮರುವ ಮಕ್ಕಳುಗೂಡಿ ಸುಖದಲಿ ರಾಜ್ಯವಾಳೆಂದ ೬೩

ಪಾರಲೌಕಿಕದುಳಿವನೈಹಿಕ
ದೋರೆ ಪೋರೆಯನಿಂದು ಬಲ್ಲವ
ರಾರು ಹೇಳಾ ವಿದುರನಲ್ಲದೆ ನಮ್ಮ ಪೈಕದಲಿ
ಸಾರವಾತನ ಮಾತು ನಯ ವಿ
ಸ್ತಾರ ಸಹಿತಿಹುದಲ್ಲಿ ನಂಬುಗೆ
ದೂರವಿಲ್ಲೆನಗರಿಯೆ ನೀ ನಿಲ್ಲೆಂದನಂಧನೃಪ ೬೪

ತಿಳುಹಿ ವಿದುರನನವರ ಕರೆಯಲು
ಕಳುಹುವೆನು ಯಮಸೂನು ನಿಮ್ಮಯ
ಬಲುಹಿನಲಿ ಬಳುಕುವನೆ ಭೀಮಾರ್ಜನರು ಕಿರುಕುಳರೆ
ತಿಳಿವೊಡೀತನ ಬುದ್ಧಿಯೇ ನಿ
ರ್ಮಲಿನವಹುದು ನಿಧಾನವಿದು ನೀ
ಕಳವಳಿಸದಿದ್ದರೆ ಮನೋರಥ ಸಿದ್ಧಿಯಹುದೆಂದ ೬೫

ನೀ ಕರುಣದಲಿ ನಮ್ಮ ಸಲಹುವ
ಡಾ ಕುಮಾರರ ಕರೆಸಿಕೊಟ್ಟರೆ
ಸಾಕು ಮತ್ತೊಂದಿಹುದಲೇ ಪಾಂಚಾಲ ನಂದನೆಯ
ನೂಕಿ ಮುಂದಲೆವಿಡಿದು ತೊತ್ತಿರೊ
ಳಾಕೆಯನು ಕುಳ್ಳಿರಿಸಿದಂದು ವಿ
ಶೋಕನಹೆನಾ ದಿವಸದಲಿ ಕೃತಕೃತ್ಯ ತಾನೆಂದ ೬೬

ಪೋಗು ನೀನೆಂದವನ ಕಳುಹಿದ
ನಾಗ ಮನದೊಳಗಧಿಕ ಚಿಂತಾ
ಸಾಗರದೊಳೋರಂತೆ ಮುಳುಗಿದನಂದು ಧೃತರಾಷ್ಟ್ರ
ಈಗಳಿನ ಸವಿಗಳುಪಿ ಮೇಲಣ
ತಾಗನರಿಯನು ಕಂದನಿದಕಿ
ನ್ನೇಗುವೆನು ಗಾಂಧಾರಿ ನೀ ಹೇಳೆಂದನಾ ಭೂಪ ೬೭

ಅವರು ಕಪಟವನರಿಯರೀತನ
ಹವಣ ನೀನೇ ಕಂಡೆ ಕರೆಸಿದ
ಡವರು ನಿಲ್ಲರು ಗೋರಿಯಲಿ ಬಳಿಸಂದ ಮೃಗದಂತೆ
ನವಗೆ ಬಹುದಪಕೀರ್ತಿಯೀಗಿ
ನ್ನವನ ಕುಹಕವ ಲೋಕವರಿಯದು
ಶಿವ ಶಿವಾಯೆಂದಳಲಿ ಮರುಗಿದನಂದು ಧೃತರಾಷ್ಟ್ರ ೬೮

ಮುರಿವೆನೇ ಮುನಿದಿವರು ನೂರ್ವರು
ತೊರೆವರೆನ್ನನು ತೊಡಕಿಸುವೆನೇ
ತರಿದು ಬಿಸುಡುವರವರು ಕೌರವ ಶತಕವನು ಬಳಿಕ
ಹೊರಗೊಳಗೆ ಹದನಿದು ನಿಧಾನಿಸ
ಲರಿಯೆನೆನ್ನಸುವಿನ ಹೃದಯದ
ಸೆರೆ ಬಿಡದು ಶಿವ ಶಿವಯೆನುತ ಮರುಗಿದನು ಧೃತರಾಷ್ಟ್ರ ೬೯

ಏಕೆ ನಿಮಗೀ ಚಿಂತೆಯಿಂದೆರ
ಡೌಕಿದವು ದುಷ್ಕಾರ್ಯ ಸಂಧಿ ವಿ
ವೇಕ ನಿಕರದಲೊರೆದು ಮೋಹರಿಸೊಂದು ಬಾಹೆಯಲಿ
ಈ ಕುರುವ್ರಜ ನೂರ ಹಿಡಿ ಕುಂ
ತೀ ಕುಮಾರರ ಬಿಡು ತನೂಜರ
ನೂಕು ಹಿಡಿ ಪಾಂಡವರನೆಂದಳು ಪತಿಗೆ ಗಾಂಧಾರಿ ೭೦

ಐಸಲೇ ತಾನಾದುದಾಗಲಿ
ಲೇಸ ಕಾಣೆನು ನಿನ್ನ ಮಕ್ಕಳ
ವಾಸಿಗಳ ವಿಸ್ತಾರ ಮೆರೆಯಲಿ ಹಲವು ಮಾತೇನು
ಆ ಸಭೆಯ ಸರಿಸದ ಸಭಾ ವಿ
ನ್ಯಾಸ ಶಿಲ್ಪಿಗರಾರೆನುತ ಧರ
ಣೀಶ ಕರೆಸಿದನುರು ಸಭಾ ನಿರ್ಮಾಣ ಕೋವಿದರ ೭೧

ತೆಗೆಸಿ ಭಂಡಾರದಲಿ ಬಹು ವ
ಸ್ತುಗಳನಿತ್ತನು ತರು ಶಿಲಾ ಕೋ
ಟಿಗಳ ತರಿಸಿದನುರು ಸಹಸ್ರಸ್ತಂಭ ಡಂಬರವ
ಝುಗ ಝುಗಿಪ ಬಹು ಮೌಲ್ಯ ಮುಕ್ತಾ
ಳಿಗಳನುರುತರ ರಶ್ಮಿ ಲಹರಿ
ಸ್ಥಗಿತ ದಿಗು ಭಿತ್ತಿಗಳನನುಪಮ ರತ್ನರಾಶಿಗಳ ೭೨

ಮಾಡಿತಗ್ಗದ ಸಭೆ ಸುಧರ್ಮೆಯ
ನೇಡಿಸುವ ಚೆಲುವಿನಲಿ ಪುರದಲಿ
ರೂಢಿಸಿತು ಬಳಿಕಂಧನೃಪನೇಕಾಂತ ಭವನದಲಿ
ಕೂಡಿಕೊಂಡು ಕುಲಾಪಘಾತದ
ಕೇಡಿಗರ ಕಲ್ಪನೆಯ ಕಲುಷದ
ಜೋಡಿಯನೆ ನಿಶ್ಚೈಸಿ ವಿದುರಂಗರುಹಿದನು ಕರೆಸಿ ೭೩

ವಿದುರ ಕೇಳೈ ಪಾಂಡವರ ಸಂ
ಪದಕೆ ಸರಿಯೊ ಮಿಗಿಲೋ ಸಭೆ ತಾ
ನಿದು ವಿಶೇಷವಲಾ ಸಮಸ್ತ ಕ್ಷತ್ರ ವಿಭವದಲಿ
ಇದರೊಳೋಲಗವಿತ್ತು ಹರ್ಷಾ
ಸ್ಪದರು ಕುರು ನೃಪರಲ್ಲಿ ಸುಖ ದ್ಯೂ
ತದಲಿ ರಮಿಸಲಿ ಕರೆದು ತಾ ಕುಂತೀ ಕುಮಾರಕರ ೭೪

ಅವರ ವಿಭವವನವರ ಯಾಗೋ
ತ್ಸವವನಿಂದ್ರಪ್ರಸ್ಥದಲಿ ಕಂ
ಡೆವು ಮನೋಹರವಾಯ್ತು ಬೆಳವಿಗೆ ಪಾಂಡು ನಂದನರ
ಅವರು ಹಸ್ತಿನಪುರಿಗೆ ಬಂದು
ತ್ಸವದಲೀ ಸಭೆಯಲಿ ಸುಖ ದ್ಯೂ
ತವನು ರಮಿಸಲಿ ಸೇರಿ ಬದುಕಲಿ ಪಾಂಡು ಸುತರೆಂದ ೭೫

ಮಾತು ಹೊಲಸಿನ ಗಂಧವಾಗಿದೆ
ಭೀತಿ ರಸದಲಿ ಮನ ಮುಳುಗಿತೀ
ಪ್ರೀತಿ ಮಾರಿಯ ಮುಸುಕನುಗಿವುದನಾರು ಕಲಿಸಿದರು
ಕೈತವದ ಕಣಿ ನಿನ್ನ ಮಗ ನೀ
ಸೋತೆಲಾ ಶಿವಶಿವ ಸುಖಾಂಗ
ದ್ಯೂತವೇ ಹಾ ಹಾಯೆನುತ ತಲೆದೂಗಿದನು ವಿದುರ ೭೬

ಹಾ ಮರುಳೆ ಕೆಣಕುವರೆ ಫಲುಗುಣ
ಭೀಮರನು ಮಿಗೆ ಹೆಚ್ಚಿ ಬೆಳೆದು
ದ್ದಾಮ ಸಿರಿಯಿದು ಹಸ್ತಿನಾಪುರವಕಟ ಕೆಡಿಸಿದೆಲ
ಕೈ ಮಗುಚದೇ ವಿಭವವಿದು ನಿ
ರ್ನಾಮರಾರೋ ಬಿತ್ತಿದರು ಕುರು
ಭೂಮಿಯಲಿ ವಿಷ ಬೀಜವನು ಹಾಯೆನುತ ಬಿಸುಸುಯ್ದ ೭೭

ವಿದುರ ಬೆಂಬೀಳದಿರು ಬಿಂಕದ
ಹದನ ಬಲ್ಲೆನು ಭೀಮ ಪಾರ್ಥರ
ಮುದವ ಬಯಸುವೆ ಮುನಿಯಲಾಪೆನೆ ಹೇಳು ತನಯರಿಗೆ
ಇದು ಮಹಾಸಭೆಯಿಲ್ಲಿ ಮೇಳಾ
ಪದಲಿ ಕುರು ಪಾಂಡವರು ಸದ್ಯೂ
ತದಲಿ ರಮಿಸುವರೇನು ಹೊಲ್ಲೆಹವೆಂದನಂಧ ನೃಪ ೭೮

ಮೊದಲಲಿದು ಸುದ್ಯೂತವವಸಾ
ನದಲಿ ವಿಷಮ ದ್ಯೂತದಲಿ ನಿಲು
ವುದು ನಿವಾರಣವುಂಟೆ ಮರ್ಮವನರಿವ ಸಬಳದಲಿ
ತುದಿಗೆ ತಾನಿದಪಥ್ಯ ಕುರುವ
ರ್ಗದಲಿ ವಿನಾಶಕ ಬೀಜವದು ನಿಮ
ಗಿದರೊಳಗೆ ಸೊಗಸಾದುದೇ ಕೈಕೊಂಡೆ ನಾನೆಂದ ೭೯

ಕರೆದು ತಾ ನೀನವರ ತಾನುಪ
ಚರಿಸುವಂದವ ನೋಡು ನಿನ್ನಯ
ಕರಣವೃತ್ತಿಗೆ ಕಠಿಣವಹವೇ ನಮ್ಮ ಮಾತುಗಳು
ದುರುಳರವರಿವರೆಂಬರದನಾ
ದರಿಸದಿರು ನೀ ಹೋಗು ಪಾಂಡವ
ಧರಣಿಪರನೊಡಗೊಂಡು ಬಾಯೆಂದಟ್ಟಿದನು ನೃಪತಿ ೮೦

ಅರುಹಿದನು ಭೀಷ್ಮಂಗೆ ಗುರು ಕೃಪ
ರರಿದರಿನ್ನಪಮೃತ್ಯುವೇನಂ
ದರಿಯದಿನ್ನುತ್ಸಾಹ ಶಕ್ತಿಗೆ ಮನವ ಮಾಡಿತಲ
ಹರಿದುದೇ ಕುರುವಂಶ ಲತೆ ಹೊ
ಕ್ಕಿರಿದನೇ ಧೃತರಾಷ್ಟ್ರ ನೀ ಬೇ
ಸರದಿರವರನು ಕರೆದು ತಾ ಹೋಗೆಂದರವರಂದು ೮೧

ಶುಭಮುಹೂರ್ತ ವಿಳಾಸಲಗ್ನ ದೊ
ಳಿಭಪುರಿಯ ಹೊರವಂಟು ಸುರ ಸ
ನ್ನಿಭನು ಬಂದನು ಹಲವು ಪಯಣದಲಿವರ ಪಟ್ಟಣಕೆ
ರಭಸ ಮಿಗಿಲಿದಿರ್ಗೊಂಡು ತಂದರು
ಸಭೆಗೆ ಮಾನ್ಯ ಯಥೋಪಚಾರ
ಪ್ರಭವ ಸತ್ಕಾರದಲಿ ಕೇಳರು ಕುಶಲ ಸಂಗತಿಯ ೮೨

ಧರಣಿಪತಿ ಗಾಂಗೇಯ ಗೌತಮ
ಗುರುತನುಜ ಗುರು ಕರ್ಣ ಸೌಬಲ
ಕುರು ನೃಪತಿಯನುಜಾತ್ಮಜರು ಗಾಂಧಾರಿ ಭಾನುಮತಿ
ವರಸಚಿವ ಸಾಮಂತ ಪರಿಜನ
ಪುರಜನಂಗಳ ಕುಶಲವನು ವಿ
ಸ್ತರಿಸಿದನು ವಿದುರನು ಮಹೀಪತಿಗಾಪ್ತ ಬಾಂಧವರ ೮೩

ಪಾವುಡಂಗಳನಿತ್ತು ಭೂಪನ
ನೋವಿದನು ನಾನಾ ಕಥಾ ಸಂ
ಭಾವನಾನಂತರದ ಮಜ್ಜನ ಭೋಜನಾದಿಗಳ
ಆ ವಿವಿಧ ಸತ್ಕಾರದಲಿ ದಿವ
ಸಾವಸಾನವ ಕಳೆದು ಬಳಿಕ ಸ
ಭಾ ವಳಯದಲಿ ಪಾಂಡು ಸುತರಿಗೆ ನುಡಿದನಾ ವಿದುರ ೮೪

ಧರಣಿಪತಿ ಬೆಸಸಿದನು ನೀವೈ
ವರು ಕುಮಾರರು ರಾಜಸೂಯಾ
ಧ್ವರ ಮಹಾವ್ರತದೇಕ ಭುಕ್ತಾದಿಯಲಿ ಬಳಲಿದಿರಿ
ವರ ಸಭೆಯ ರಚಿಸಿದರು ಹಸ್ತಿನ
ಪುರಿಗೆ ಬಿಜಯಂಗೈದು ವಿಭವೋ
ತ್ಕರದ ವಿಮಳ ದ್ಯೂತದಲಿ ರಮಿಸುವುದು ನೀವೆಂದ ೮೫

ನೋಡುವುದು ಬಾಂಧವರ ನಿಮ್ಮಡಿ
ಮಾಡುವುದು ಸೌಖ್ಯವನು ಭಯದಲಿ
ಬಾಡುವುದಲೇ ರಿಪುನೃಪಾಲರ ಸಮರ ಜಯಬೀಜ
ಜೋಡಿಸುವುದಗಲದಲಿ ಕೀರ್ತಿಯ
ಝಾಡಿಯನು ನಿಮ್ಮಭ್ಯುದಯ ಬಳಿ
ಕೇಡಿಸುವುದೆ ದುಂದುಮಾರ ದಿಲೀಪ ದಶರಥರ ೮೬

ನಂಬಿಸುವ ನಿಮ್ಮಯ್ಯನಿದ ಬೇ
ಡೆಂಬವರು ಗುರು ಭೀಷ್ಮರುಳಿದವ
ರಂಬಿನೋಪಾದಿಯಲಿ ನಿಲುವರು ಪಲವು ಮಾತೇನು
ಶಂಬರರು ನೃಪ ಕರ್ಣ ಶಕುನಿಗ
ಳೆಂಬವರು ನಿಮ್ಮೊಡನೆ ವಚನಾ
ಡಂಬರವೆ ಬಹುದುಂಟೆ ಬಿಜಯಂಗೈಯಿ ನೀವೆಂದ ೮೭

ಕರೆಸುವನು ಧೃತರಾಷ್ಟ್ರ ಗಡ ನ
ಮ್ಮರಸನಲಿ ಧೃತರಾಷ್ಟ್ರನಲಿ ನಮ
ಗೆರಡು ಮನವೇ ಭಾವ ಭೇದವೆ ಪಾಂಡು ಬೊಪ್ಪನಲಿ
ವರವೆ ದೊರಕಲಿ ಶಾಪವೇ ಮೇಣ್ಪ
ರಲಿ ಭಯವಿಲ್ಲೆಮಗೆ ಬೊಪ್ಪನ
ಕರಣ ಕೃತಿಗೆ ಹಸಾದವೆಂದನು ಧರ್ಮ ನಂದನನು ೮೮

ದ್ಯೂತ ಮೃಗಯಾ ವ್ಯಸನ ಪೌರು
ಷ್ಯಾತಿಶಯ ಮಧುಪಾನ ಕಾಂತಾ
ಪ್ರೀತಿ ದಂಡ ವಿಘಾತಿ ದೂಷಣಪರ್ಥ ಸಂಗತಿಯು
ಜಾತ ಸಪ್ತವ್ಯಸನವಿವು ಸಂ
ಪ್ರೀತಿಕರ ಮೊದಲಲಿ ವಿಪಾಕದೊ
ಳಾತು ಕೆಡಿಸುವ ಹದನನರಿದಿಹುದೆಂದನಾ ವಿದುರ ೮೯

ಖಳರು ಕೌರವರಕ್ಷ ಧೂರ್ತರ
ತಿಲಕ ಶಕುನಿ ವಿಕಾರಿಯಾ ದು
ಸ್ಸಳೆಯ ಪತಿ ದೌರ್ಜನ್ಯಮುಖದೀಕ್ಷಿತನು ಕಲಿಕರ್ಣ
ಉಳಿದ ಭೀಷ್ಮ ದ್ರೋಣರೇ ನಿ
ಷ್ಫಲ ವಿಧಾನರು ನಿಮ್ಮ ಬೊಪ್ಪನ
ಬಳಕೆ ಕನ್ನಡಿ ನೋಡಿಕೊಳಿ ನೀವೆಂದನಾ ವಿದುರ ೯೦

ಪ್ರಕಟವದು ಸಲೆ ಕರ್ಣ ಕೌರವ
ಶಕುನಿಗಳ ದುಶ್ಚೇಷ್ಟೆ ಭೀಷ್ಮಾ
ದ್ಯಕುಟಿಲರು ಸಲ್ಲರು ಸುಯೋಧನ ಮಂತ್ರ ಸಂಗತಿಗೆ
ಮುಕುರ ಪಥವೆಮ್ಮಯ್ಯನೆಂಬುದು
ವಿಕಳವಲ್ಲಲೆ ವಿದುರ ಪರಿ ಪಾ
ಲಕನಲೇ ಧೃತರಾಷ್ಟ ನಾತನ ನಂಬಿ ಬಹೆವೆಂದ ೯೧

ಕರೆಸಿ ನಿಮ್ಮಯ ಮಂತ್ರಿಜನ ಮು
ಖ್ಯರ ಪಸಾಯ್ತರ ಕೇಳುವುದು ಮನ
ದೊರೆಗೆ ತೂಕಕೆ ಬಹರೆ ಭೀಮಾದಿಗಳ ಮತವಿಡಿದು
ಅರಸ ನಿಶ್ಚೈಸುವುದೆನಲು ನೀ
ಮರುಳೆ ವಿದುರ ಭವದ್ವಚೋವಿ
ಸ್ತರಕೆ ಪಡಿಸಣವುಂಟೆ ಶಿವ ಶಿವಾಯೆಂದನಾ ಭೂಪ
೯೨

ಹೋಹುದೇನಭಿಮತವೆ ಧೂರ್ತ
ವ್ಯೂಹವದು ಭೀಷ್ಮಾದಿ ಹಿರಿಯರು
ಸಾಹಸಿಗರಲ್ಲದೆ ರಹಸ್ಯಕೆ ಸಲ್ಲರವರುಗಳು
ಕಾಹುರರು ಕೌರವರು ಸಮರೋ
ತ್ಸಾಹಶಕ್ತಿಗೆ ಠಾವದಲ್ಲ
ವ್ಯಾಹತವೆ ಮತವೆಂದು ಭೀಮಾದಿಗಳ ಬೆಸಗೊಂಡ ೯೩

ಜೀಯ ಬಿನ್ನಹವಿಂದು ದೇಹ
ಚ್ಛಾಯೆಗುಂಟೇ ಬೇರೆ ಚೇಷ್ಟೆ ನ
ವಾಯಿಯೇ ನಮ್ಮಿನಿಬರಿಗೆ ರಾಜಾಭಿಮಾನದಲಿ
ನೋಯೆ ನೋವುದು ನಿಮ್ಮ ದೇಹದ
ಬೀಯದಲಿ ನಾಣ್ಬೇಯುವಹುದೆ
ಮ್ಮಾಯತಂ ಸ್ವಾತಂತ್ರ್ಯವೆಮಗಿಲ್ಲೆಂದನಾ ಭೀಮ ೯೪

ಕರೆಸುವನು ಧೃತರಾಷ್ಟ್ರ ನಿಮ್ಮನು
ಕರೆವ ಮಣಿಹ ಸುಯೋಧನಾದ್ಯರ
ಮರುಳುಗಳ ಮಾತೇನು ಹಿತವರು ನೀವಲಾ ನನಗೆ
ಧರಣಿಯಿದು ಶಾಶ್ವತವೆ ತಂದೆಗೆ
ಹಿರಿಯನಾ ಧೃತರಾಷ್ಟ್ರನಾಜ್ಞೆಯ
ಶಿರದೊಳಾಂತೆನು ಬಹೆನೆನುತ ನಿಶ್ಚೈಸಿದನು ನೃಪತಿ ೯೫

ಇರುಳ ನೂಕಿದರುದಯದಲಿ ಭೂ
ಸುರರ ಕರೆಸಿದರಮಳ ಸಾಂವ
ತ್ಸರಿಕ ಸುಮುಹೂರ್ತದಲಿ ಹೊಯಿಸಿದರಂದು ಹೊರಗುಡಿಯ
ಪುರದ ಕಾಹನು ಸಚಿವ ಸಾವಂ
ತರಿಗೆ ನೇಮಿಸಿ ಸಕಲ ದಳ ಮೋ
ಹರದ ದೆಖ್ಖಾಳವನು ಕಂಡನು ಪುರವ ಹೊರವಂಟ ೯೬

ಬಿಗಿದ ರೆಂಚೆಯ ಹೊಮ್ಮಿಣಿಯ ಹೊರ
ಜೆಗಳ ಜೋಡಿಯ ಪಕ್ಕಘಂಟೆಯ
ಝುಗೆಯ ಮೊಗರಂಬದ ನವಾಯಿಯ ಮಣಿಯ ಜಲವಟೆಯ
ಬಿಗಿದ ಕೂರಂಕುಶದ ಮಾವಂ
ತಿಗನ ಸನ್ನೆಗೆ ಕುಸಿದ ದಂತಿಯ
ಹೆಗಲ ಹೊಂಗದ್ದುಗೆಗೆ ಬಿಜಯಂಗೈದನಾ ಭೂಪ ೯೭

ತಳಿತವಿನನುದಯದಲಿ ತಾರಾ
ವಳಿಗಳದ್ಭುತವೆನಲು ಮುಕ್ತಾ
ವಳಿಯ ಧವಳಚ್ಛತ್ರದೆಡ ಬಲಕೊಲೆವ ಚೌರಿಗಳ
ಕೆಲಬಲದ ಭೀಮಾರ್ಜುನರ ಗಜ
ದಳದ ಮುಂದೆ ಕುಮಾರ ವರ್ಗದ
ಸುಳಿವುಗಳ ಸೌರಂಭದಲಿ ಹೊರವಂಟನಾ ಭೂಪ ೯೮

ಮುಂದೆ ಮೋಹರ ತೆಗೆದು ನಡೆದುದು
ಸಂದಣಿಸಿ ನಕುಲಾದಿ ಭೂಪರು
ಹಿಂದೆ ಮಣಿ ಕೇವಣದ ದಡ್ಡಿಯ ಬಿಗಿದ ಬೀಯಗದ
ಗೊಂದಣದ ಹೆಮ್ಮಕ್ಕಳಿದ್ದೆಸೆ
ಯಂದಣದ ಸಂದಣಿಗಳಲಿ ನಡೆ
ತಂದವನಿಬರ ರಾಣಿವಾಸದ ದಂಡಿಗೆಗಳಂದು ೯೯

ಉಡಿಗೆಗಳ ದೇಸಿಯ ವಿಳಾಸದ
ತೊಡಿಗೆಗಳ ಮೌಳಿಯ ನವಾಯಿಯ
ಮುಡಿಗಳೆಡ ಬಲದೋರೆನೋಟದ ಬಳ್ಳಿ ಬೆಳಗುಗಳ
ಕಡು ಬೆಮರ ತನು ಪರಿಮಳದೊಳೆಡೆ
ವಿಡದ ಗಗನೋದರದ ಗರುವೆಯ
ರಡಸಿದರು ದ್ರುಪದಾತ್ಮಜೆಯ ದಂಡಿಗೆಯ ಬಳಸಿನಲಿ ೧೦೦

ಭೂರಿ ಭೇರೀ ವಾದ್ಯರವ ಕೈ
ವಾರಿಗಳ ಕಳಕಳದೊಳಡಗಿತು
ನಾರಿಯರ ನೇವುರದ ಮೊಳಗಿನೊಳದ್ದುದಾ ರಭಸ
ಆರು ಹೊಗಳುವರಾ ವಿಭವ ವಿ
ಸ್ತಾರ ಪಣವನು ಪಯಣ ಗತಿಯಲಿ
ಭೂರಮಣನೈತಂದು ಹೊಕ್ಕನು ಹಸ್ತಿನಾಪುರವ ೧೦೧

ಹದಿಮೂರನೆಯ ಸಂಧಿ

ಸೂ. ವೀತರಾಗದ್ವೇಷಭಯನನ
ಜಾತ ಶತ್ರುವನಕಟ ಕಪಟ
ದ್ಯೂತದಲಿ ಕುರುರಾಯ ಗೆಲಿದನು ಧರ್ಮನಂದನನ

ಕೇಳು ಜನಮೇಜಯ ಧರಿತ್ರೀ
ಪಾಲ ಪಾಂಡವ ನೃಪರನರಮನೆ
ಬೀಳುಗೊಂಡುದು ವಿಳಸದಿಂದ್ರಪ್ರಸ್ಥಪುರ ಸಹಿತ
ಮೇಲೆ ನೆಗಳುವ ದುರ್ನಿಮಿತ್ತವ
ನಾಲಿಸಿದರೇ ದೈವದೋಷ ನಿ
ಮೀಲಿತಾಂತಃಕರಣ ಹತರೈತಂದರಿಭಪುರಿಗೆ ೧

ಹರಡೆ ಕೆದರಿತು ಬಲದಲುದಯದ
ಉರಿಯಲೊದರಿತು ಹಸುಬನೆಡದಲಿ
ಕರೆಯು ಹಕ್ಕಿಯು ತಾರುಹಂಗನ ವಾಮದುಡಿಕೆಗಳ
ನರಿಗಳೊದರಿದವಿದಿರಿನಲಿ ಮೋ
ಹರವ ಮೊಲನಡಹಾಯ್ದುವಾನೆಗ
ಳರಚಿ ಕೆಡೆದವು ಮುಗ್ಗಿದವು ರಥವಾಜಿಗಳು ನೃಪರ ೨

ಶಕುನಗತಿ ಸಾಮಾನ್ಯವಿದು ಕಂ
ಟಕದ ನೆಲೆ ಜನ್ಮದಲಿ ಸಪ್ತಾ
ಧಿಕದೊಳಿದ್ದರು ಸೌರಿ ಗುರು ಭೌಮಾಬ್ಜಬಾಂಧವರು
ವಿಕಳದೆಸೆ ನಿಮ್ಮಡಿಗೆ ವೈರಿ
ಪ್ರಕರಕುನ್ನತದೆಸೆ ಮಹೀ ಪಾ
ಲಕ ಶಿರೋಮಣಿ ಪುರಕೆ ಮರಳೆಂದರು ಮಹೀಸುರರು ೩

ಮರಳಲಹುದೈ ದೈವವಿಕ್ಕಿದ
ಕೊರಳುಗಣ್ಣಿಯ ಕುಣಿಕೆಯಾರಲಿ
ಹರಿವುದೈ ಮನ್ನಿಸಿದನೇ ಮೌಹೂರ್ತಿಕರ ನುಡಿಯ
ಕರೆಸುವನು ಧೃತರಾಷ್ಟ್ರ ನಮಗೀ
ನರಿ ಮೊಲಂಗಳ ಹಕ್ಕಿ ಹರಿಣೆಯ
ಕರಹವೇಗುವವೆಂದು ಜರೆದನು ಶಕುನ ಕೋವಿದರ ೪

ಹರಿದರರಸಾಳುಗಳು ರಾಯನ
ಬರವನರುಹಿದರಂಧ ಭೂಪತಿ
ಪುರದೊಳಗೆ ಗುಡಿಗಟ್ಟಿಸಿದನತ್ಯಧಿಕ ಹರ್ಷದಲಿ
ಸುರನದೀಜ ದ್ರೋಣ ಗೌತಮ
ಗುರುಜ ಕರ್ಣ ಜಯದ್ರಥಾದಿಗ
ಳುರು ವಿಭವದಿಂದಿದಿರುಗೊಂಡರು ಹೊಗಿಸಿದರು ಪುರವ ೫

ಸೇನೆ ಬಿಟ್ಟುದು ಪುರದ ಬಹಿರೋ
ದ್ಯಾನ ವೀಧಿಗಳೊಳಗೆ ಕುಂತೀ
ಸೂನುಗಳು ಸುಮ್ಮಾನ ಮಿಗೆ ನಡೆತಂದರಿಭಪುರಿಗೆ
ಆ ನಗರದೊತ್ತೊತ್ತೆಗಳನಾ
ಮಾನಿನಿಯರುಪ್ಪಾರತಿಯನವ
ರಾನನೇಂದು ಪ್ರಭೆ ವಿಭಾಡಿಸೆ ಬಿಸಿಲ ಬೇಗೆಗಳ ೬

ಪೌರ ನಾರೀಜನದ ತಳಿಗೆಗ
ಳಾರತಿಯು ಸೇಸೆಗಳ ಲಾಜೆಯ
ತೋರ ಮುತ್ತಿನ ಮಳೆಯು ಮಂಗಳರವದ ಕಳಕಳದ
ಓರಣದ ತೋರಣದ ಗುಡಿಗಳ
ಚಾರು ವೀಧಿಗಳೊಳಗೆ ಬಂದರು
ಭೂರಮಣರುತ್ಸಾಹದಲಿ ಧೃತರಾಷ್ಟ್ರನರಮನೆಗೆ ೭

ಇಳಿದರಾನೆಯನಮಳ ರತ್ನಾ
ವಳಿಯ ಕಾಣಿಕೆಗಳನು ಸುರಿದರು
ಖಳ ಶಿರೋಮಣಿಗೆರಗಿದರು ಧೃತರಾಷ್ಟ್ರ ಭೂಪತಿಗೆ
ಕುಲತಿಲಕ ಬಾ ಕಂದ ಭರತಾ
ವಳಿ ವನದ ಮಾಕಂದ ಧರ್ಮ
ಸ್ಥಳ ಲತಾವಳಿ ಕಂದ ಬಾಯೆಂದಪ್ಪಿದನು ನೃಪನ ೮

ಬಾ ಮಗನೆ ರಿಪುರಾಯ ಮನ್ಮಥ
ಭೀಮ ಬಾರೈ ಭೀಮ ರಣ ನಿ
ಸ್ಸೀಮ ಫಲುಗುಣ ಬಾ ನಕುಲ ಸಹದೇವ ಬಾಯೆನುತ
ಪ್ರೇಮ ರಸದಲಿ ಬೇರೆ ಬೇರು
ದ್ದಾಮ ಭುಜನಪ್ಪಿದನು ಚಿತ್ತದ
ತಾಮಸದ ತನಿ ಬೀಜ ಮುಸುಕಿತು ಹರ್ಷ ರಚನೆಯಲಿ ೯

ಹರಸಿದನು ಕಾಣಿಕೆಯ ಕೊಂಡೈ
ವರ ಮಹಾ ಸತಿಯನು ಕುಮಾರರ
ನರಸಿಯರನನಿಬರ ವಚೋ ರಚನೆಯಲಿ ಮನ್ನಿಸಿದ
ಅರಸ ಗಾಂಧಾರಿಯನು ವಂದಿಸಿ
ದರುಶನವ ಕೊಡು ಹೋಗೆನಲು ಕಡು
ಹರುಷ ಮಿಗಿಲೈತಂದರಾ ಗಾಂಧಾರಿಯರಮನೆಗೆ ೧೦

ಬಂದು ಕಾಣಿಕೆ ಕೊಟ್ಟು ವಂದಿಸಿ
ನಿಂದರೈವರು ತನ್ನ ಕೆಳದಿಯ
ರಿಂದ ತರಿಸಿದಳಾರತಿಯನುಪ್ಪಾರತಿಯನೊಲಿದು
ಚಂದ ಮಿಗೆ ಸಾವಿರದ ಸಂಖ್ಯೆಯ
ರಿಂದು ಮುಖಿಯರ ತಳಿಗೆಯಾರತಿ
ಸಂದಣಿಸಿದವು ಜಯ ಸಬುದ ರೆಥೋಂಪಿಸಿದುದಂಬರವ ೧೧

ಅರಸಿ ಕಾಣಿಸಿಕೊಂಡಳೀ ನೃಪ
ರರಸಿಯನು ಸುಕುಮಾರಕರನವ
ರರಸಿಯರ ಸಖಿಯರ ವಿಳಾಸಿನಿಯರ ಪಸಾಯ್ತೆಯರ
ತರಿಸಿ ಕೊಟ್ಟನು ಬೇರೆ ಬೇರನಿ
ಬರಿಗೆ ಉಡುಗೊರೆ ಗಂಧ ಮಾಲ್ಯಾ
ಭರಣವನು ರಾಜೋಪಚಾರ ವಿಳಾಸ ವಿಭವದಲಿ ೧೨

ಬೀಳುಕೊಟ್ಟಳು ಬಳಿಕ ಕುರು ನೃಪ
ನಾಲಯಕೆ ಕರೆದೊಯ್ದು ಕುಂತಿಯು
ಕಾಲಿಗೆರಗಿದನಿವರನುಚಿತೋಕ್ತಿಯಲಿ ಮನ್ನಿಸಿದ
ಬಾಲಮೃಗವೊಳಗಾಯ್ತಲಾ ತೊಡು
ಕೋಲನೆಂದರು ನಗುತ ಮನದಲಿ
ಕೌಳಿಕದ ಕುಹಕಿಗಳು ಕೌರವರಾಯ ಶಕುನಿಗಳು ೧೩

ಖಳರ ಹೃದಯದ ಕಾಳ ಕೂಟದ
ಹುಳುಕ ಬಲ್ಲರೆ ಮಾನ್ಯರವದಿರ
ಲಲಿತ ಮಧುರ ವಚೋವಿಳಾಸಕೆ ಮರುಳಗೊಂಡರಲೈ
ಅಳುಪಿದರೆ ಮಧುಕರನ ಮರಿ ಬೊ
ಬ್ಬುಲಿಯ ವನದೊಳಗೇನಹುದು ನೃಪ
ತಿಲಕರಿದ್ದರು ಬೇರೆ ರಚಿಸಿದ ರಾಜಭವನದಲಿ ೧೪

ಬಂದು ಕಂಡುದು ನಿಖಿಳ ಪುರಜನ
ವಂದು ಕಾಣಿಕೆಗೊಟ್ಟು ಕೌರವ
ನಂದನರು ಸಚಿವರು ಪಸಾಯ್ತರು ನಿಯೋಗಿ ಮಂತ್ರಿಗಳು
ಸಂದಣಿಸಿದುದು ಕವಿ ಗಮಕಿ ನಟ
ವಂದಿ ಮಾಗಧ ಮಲ್ಲ ಗಾಯಕ
ವೃಂದ ದೀನಾನಾಥರೋಲಗಿಸಿದರು ಧರ್ಮಜನ ೧೫

ಆ ದಿವಸವನು ಮಧುರ ಗೇಯ ನಿ
ನಾದದಲಿ ಕವಿ ವಾದಿ ವಾಗ್ಮಿ ವಿ
ನೋದದಲಿ ನೂಕಿದರು ಮಜ್ಜನ ಭೋಜನಾದಿಯಲಿ
ಆದುದುತ್ಸಹವಂದಿನಿರುಳು ದಿ
ನಾದಿಯಲಿ ಕಂಡನು ಕನಸ ಪ್ರಾ
ಸಾದ ಶಿಖರವು ಮುರಿದು ಬಿದ್ದುದನಡವಿ ಮಧ್ಯದಲಿ ೧೬

ಅರಸನುಪ್ಪವಡಿಸಿದನವನೀ
ಶ್ವರ ವಿಹಿತ ಸತ್ಕ್ರಿಯೆಗಳನು ವಿ
ಸ್ತರಿಸಿದನು ದುಃಸ್ವಪ್ನಕುಂತ ವಿಭಿನ್ನಚೇತನನು
ಕರೆಸಿ ಧೌಮ್ಯನಿಗರುಹಲತಿ ದು
ಸ್ತರದ ಕನಸಿದು ಶಾಂತಿ ಕರ್ಮವ
ಪುರದೊಳಗೆ ವಿರಚಿಸುವೆನಂಜದಿರೆಂದನಾ ಮುನಿಪ ೧೭

ಪುರದೊಳೆಲ್ಲಿಯು ಶಾಂತಿ ನಾರದ
ನೊರೆದನುತ್ಪಾತ ಪ್ರಬಂಧದ
ಹೊರಿಗೆಯನು ನಿಮ್ಮೈಶ್ವರಿಯ ವಿಧ್ವಂಸಕರವೆಂದು
ಇರುಳು ನಾನಾ ಸ್ವಪ್ನ ಕಾನನ
ಗಿರಿ ಪರಿಭ್ರಮಣೈಕ ಚಿಂತಾ
ಭರಿತನಾದೆನು ದೈವಕೃತ ಉಪಭೋಗ್ಯವೆನಗೆಂದ ೧೮

ಜನಪ ಕಳುಹಿದ ದೂತರಿವರರ
ಮನೆಗೆ ಬಂದರು ಜೀಯ ಧೃತರಾ
ಷ್ಟ್ರನ ಸಮಯವಾಯಿತ್ತು ನಿಮ್ಮಡಿ ಬಿಜಯ ಮಾಡುವದು
ಎನಲು ತನ್ನ ಕುಮಾರರನು ತ
ನ್ನನುಜರನು ಸಚಿವ ಪ್ರಧಾನರ
ನನಿಬರನು ಕರೆಸಿದನು ನೃಪ ಹೊರವಂಟನರಮನೆಯ ೧೯

ಬಂದು ಧೃತರಾಷ್ಟ್ರನ ಪದಾಬ್ಜಕೆ
ವಂದಿಸಿದೊಡೆನ್ನಾನೆ ಬಾರೈ
ತಂದೆ ಬಾರೆಂದೆಳೆದು ಕುಳ್ಳಿರಿಸಿದನು ಮಂಚದಲಿ
ನಂದನರು ಭೀಮಾರ್ಜುನಾದಿಗ
ಳಂದು ಪರಿವೇಷ್ಟಿಸಿದರಿತ್ತಲು
ಕಂದು ಹೃದಯದ ಕೌರವೇಂದ್ರನ ಹದನ ಕೇಳೆಂದ ೨೦

ಕರೆಸಿದನು ಶಕುನಿಯನು ಕರ್ಣಂ
ಗರುಹಿದನು ಸೈಂಧವನನೆಕ್ಕಟಿ
ಗರೆದು ಹೇಳಿದ ಕೃತ್ರಿಮದ ಹಾಸಂಗಿಗಳ ರಚಿಸಿ
ಹರಸಿಕೊಂಡರು ಗಣಪ ಯಕ್ಷೇ
ಶ್ವರಿ ಕಳಾವತಿ ದುರ್ಗಿ ಭುವನೇ
ಶ್ವರಿಗಳಿಗೆ ವಿವಿಧೋಪಚಾರದ ಬಲಿ ವಿಧಾನದಲಿ ೨೧

ದ್ಯೂತ ಸಿದ್ಧಿಯ ಮಂತ್ರ ವರ ವಿ
ದ್ಯಾತಿಶಯ ವಿಚ್ಛೇದ ರಕ್ಷವಿ
ಧೂತ ರಿಪುಮತಿ ಯಂತ್ರ ಪರಸಮ್ಮೋಹನೌಷಧಿಯ
ಈತಗಳು ಮೇಳವಿಸಿದರು ನಿ
ರ್ಭೀತರಿವರಿದನೆತ್ತ ಬಲ್ಲರು
ಕೈತವದ ಕಣಿ ಕೌರವೇಶ್ವರ ಬಂದನರಮನೆಗೆ ೨೨

ಚಿತ್ರವಿಸಿದರೆ ಬೊಪ್ಪ ಮಯನಿವ
ಗಿತ್ತ ಸಭೆಯದು ದೇವ ನಿರ್ಮಿತ
ವೆತ್ತ ಮಾನವ ಕರ್ಮವೆತ್ತಲು ಸರಿಸವಲ್ಲದಕೆ
ಇತ್ತ ನಿಮ್ಮಡಿ ಮಾಡಿಸಿದ ಸಭೆ
ಯೆತ್ತ ಬಿಜಯಂಗೈದು ನೋಡಿದ
ಡುತ್ತಮವಲಾಯೆಂದನಾ ದುರ್ಯೋಧನನು ನಗುತ ೨೩

ಆ ಸಭೆಯ ನೋಡುವೆವು ಶಿಲ್ಪದ
ದೇಸಿಗಾರರ ಕೈಮೆಗಳು ಲೇ
ಸೈಸಲೇ ಬೇರೇನು ಮಾನುಷ ದೈವಕೃತಿಯೆಂದು
ಈಸು ಸಂಪ್ರಿಯ ನಮ್ಮಲುಂಟೇ
ಲೇಸೆನುತ ನೃಪನೆದ್ದು ಕೈಗೊಡ
ಲಾ ಸಭೆಗೆ ಧೃತರಾಷ್ಟ್ರ ಬಂದನು ರಾಜಗಣ ಸಹಿತ ೨೪

ಬಿಗಿದ ನೀಲದ ಸರಿಯ ನೆಲಗ
ಟ್ಟುಗಳ ವೈಡೂರಿಯದ ಮಣಿ ಭಿ
ತ್ತಿಗಳ ವಜ್ರದ ವೇದಿಗಳ ವಿದ್ರುಮದ ಲೋವೆಗಳ
ಝಗೆಯ ಲಹರಿಯ ಜಾಳಿಗೆಯ ಪ
ಚ್ಚೆಗಳ ಪಾಗಾರದ ಸುರತ್ನಾ
ಳಿಗಳಲೆಸೆದುದು ರಾಜಸಭೆ ತತ್ಕ್ರೋಶ ಮಾತ್ರದಲಿ ೨೫

ಕವಿದವರುಣಾಂಶುಗಳ ಲಹರಿಯ
ಲವಣಿ ಲಾವಣಿಗೆಯಲಿ ನೀಲ
ಚ್ಛವಿಯ ದೀಧಿತಿ ಝಳಪಿಸಿತು ದೆಸೆದೆಸೆಯ ಭಿತ್ತಿಗಳ
ತಿವಿದವೆಳ ಮುತ್ತುಗಳ ಚಂದ್ರಿಕೆ
ಜವಳಿಸಿದವೊಂದೊಂದನೌಕಿದ
ವವಿರಳಿತ ಮಣಿ ಕಿರಣ ವೇಣೀಬಂಧ ಬಂಧುರದಿ ೨೬

ಅಲ್ಲಿ ವಿಮಲೋದ್ಯಾನ ವೀಥಿಗ
ಳಲ್ಲಿ ತಾವರೆಗೊಳದ ರಚನೆಗ
ಳಲ್ಲಿ ಹಂಸ ಮಯೂರ ಮಧುಕರ ಶುಕ ಪಿಕಾನೀಕ
ಅಲ್ಲಿ ಕೇಳೀ ಶೈಲ ಹಿಮ ಗೃಹ
ವಲ್ಲಿ ವಿವಿಧ ವಿಳಾಸ ರಚನೆಗ
ಳಲ್ಲಿ ಹೊಯ್ಕೈಯೆನಿಸಿ ಮೆರೆದುದು ಪಾಂಡವರ ಸಭೆಯ ೨೭

ಸ್ಥಳವನೇ ಜಲವೆಂದು ನಿರ್ಮಳ
ಜಲವನೇ ಸ್ಥಳವೆಂದು ಬಾಗಿಲ
ನೆಳಲ ಭಿತ್ತಿಯ ಹಾಯ್ದು ಬಾಗಿಲ ಭಿತ್ತಿಯೆಂದಿಳಿದು
ಕಳವಳಿಸುವನೆ ಧರ್ಮಸುತನಾ
ಕೊಳನನೇ ಕೊಳನೆಂದು ಬಾಗಿಲ
ನೆಳಲ ಹೊಗಳುತ ಬಂದು ಹೊಕ್ಕನು ಬಹಳ ಚೌಕಿಗೆಯ ೨೮

ಕೆಲಸದಲಿ ಶಿಲ್ಪದಲಿ ರತ್ನಾ
ವಳಿಯ ಘಾಟ ನವಾಯಿಯಲಿ ಸಭೆ
ಯಿಳೆಗಪೂರ್ವವಲಾ ಮಹಾದೇವೆಂತು ರಚಿಸಿದರೊ
ವಿಳಸದಾಯವ್ಯಯದ ವಿಶ್ರುತ
ವಳಯದುನ್ನತ ವಾಸ್ತು ಲಕ್ಷಣ
ದೊಳಗೆ ಸೇರಿದುದೆಂದು ನೃಪ ಕೊಂಡಾಡಿದನು ಸಭೆಯ ೨೯

ಸೂಸಕದ ಮುತ್ತುಗಳು ತಾರಾ
ರಾಶಿಗಳ ಹಬ್ಬುಗೆಯ ನೀಲದ
ಹಾಸರೆಗಳೇ ಹೋಲುತಿದ್ದವು ಗಗನ ಮಂಡಲವ
ಸೂಸಕಂಗಳ ಮುರಿದ ಮುತ್ತಿನ
ದೇಶಿಕಾತಿಯರಾನನೇಂದುಗ
ಳಾ ಸುಧಾಕರವೆನಲು ಗೆಲಿದುದು ಸಭೆ ನಭಸ್ಥಳವ ೩೦

ಗುರು ನದೀಸುತ ಕರ್ಣ ಸೈಂಧವ
ಗುರುತನುಜ ಭಗದತ್ತ ಬಾಹ್ಲಿಕ
ನುರು ಯವನ ಸಂವೀರ ಕೌಸಲ ಚೈದ್ಯ ಮಾಗಧರು
ಅರಸುಗಳು ನಾನಾ ದಿಗಂತದ
ಧರಣಿಪರು ಸಚಿವರು ಪಸಾಯ್ತರು
ನೆರೆದುದಂದಿನ ದಿವಸದೋಲಗದೊಡ್ಡು ಚೆಲುವಾಯ್ತು ೩೧

ಧರಣಿಪತಿ ಕೇಳೊಂದು ಹರಿಯಂ
ತರ ವಿಶಾಲ ಮಹಾಸಭಾ ವಿ
ಸ್ತರಣವದರಲಿ ತೆರಹ ಕಾಣೆನು ತೀವಿತವನಿಪರು
ಹೊರಗೆ ರಥಿಕರು ರಾಹುತರು ಜೋ
ಧರು ಪದಾತಿಗಳಿದ್ದುದಂದಿನ
ಸಿರಿ ಸುರೇಂದ್ರನ ಪಾಡಿಗೈಮಡಿ ಹತ್ತು ಮಡಿಯೆಂದ ೩೨

ಒಂದು ಕಡೆಯಲಿ ಕವಡಿಕೆಯ ಜೂ
ಜೊಂದು ಕಡೆಯಲಿ ಗದ್ಯಪದ್ಯವ
ದೊಂದು ಕಡೆಯಲಿ ವಾರವಧುಗಳ ಸಾರಸಂಗೀತ
ಒಂದು ಕಡೆಯಲಿ ತರ್ಕ ಗೋಷ್ಠಿಯ
ದೊಂದು ಕಡೆಯಲಿ ಕೌರವೇಂದ್ರನ
ಮುಂದೆ ಜಡಿದುದು ರಭಸ ಹಾಸಂಗಿಗಳ ಸಾರಿಗಳ ೩೩

ಆಡಲರಿವನು ಗಡ ಯುಧಿಷ್ಠಿರ
ನಾಡುವರೆ ಬರಹೇಳು ಮೇಣ್ನಾ
ನೋಡುತಿರಲಾವಾಡುವೆವು ಸಭೆಯಲಿ ವಿನೋದದಲಿ
ಖೋಡಿಯಿಲ್ಲದ ಸರಸ ನೆತ್ತವ
ನಾಡಲರಿಯದ ನೃಪತಿ ಮೃಗವೆಂ
ದಾಡುತಿಹರರಿದವರು ತಾವಲ್ಲೆಂದನಾ ಶಕುನಿ ೩೪

ಅಹುದು ಹೊಲ್ಲೆಹವಾವುದಾಡಲು
ಬಹುದು ಸುಜನರ ಕೂಡೆ ನೀವೇ
ಕುಹಕ ವಿದ್ಯಾಸಾರ್ವಭೌಮರು ಶಕುನಿ ಕೌರವರು
ಸುಹೃದಯರಿಗತಿ ಕುಟಿಲರಲಿ ನಿ
ಸ್ಪೃಹರಿಗತಿ ರಾಗಿಗಳೊಡನೆ ದು
ಸ್ಸಹ ಕಣಾ ಸಮ್ಮೇಳವೆಂದನು ಧರ್ಮಸುತ ನಗುತ ೩೫

ನೀವು ಸುಹೃದಯರಿಂದು ದುರ್ಜನ
ರಾವು ನೀವ್ನೀರಾಗಿಗಳು ರಾ
ಗಾವಲಂಬರು ನಾವಲೇ ನೀವರಿಯಿರೇ ನಿಜವ
ನೀವು ನಾವೆಂಬೀ ಪೃಥಗ್ಭಾ
ವಾವಲಂಬನವೇಕೆ ನಿಮ್ಮಲಿ
ನಾವು ನಮ್ಮಲಿ ನೀವೆಯೆಂದನು ನಗುತ ಕುರುರಾಯ ೩೬

ಇರಲಿ ಬಾಂಧವರಿದರೊಳೆರಡಿ
ಟ್ಟಿರದೆ ನಿಲಲದು ಲೇಸಲಾ ವಿ
ಸ್ತರಿಸಲೇಕೈ ದ್ಯೂತ ದುರ್ವ್ಯಸನ ಪ್ರಪಂಚವಿದು
ತರುಣ ವಿಟ ಚಾರಣ ಕುಶೀಲಕ
ಭರತ ಗಣಿಕಾಯೋಗ್ಯ ವಿಷಯಕೆ
ಗರುವರೊಲಿವರೆಯೆಂದನಾ ಕುರುಪತಿಗೆ ಯಮಸೂನು ೩೭

ದ್ಯೂತವಿದು ದುರ್ವ್ಯಸನವೆಂಬವ
ನೀತಿವಿದನೇ ಶ್ರೋತ್ರಿಯರಿಗ
ಖ್ಯಾತಿಯದು ಯತಿಗಳಿಗೆ ಮೇಣ್ ರಣಭೀತ ಭೂಪರಿಗೆ
ದ್ಯೂತ ಮೃಗಯಾ ಸ್ತ್ರೀವ್ಯಸನ ನೃಪ
ಜಾತಿಗೋಸುಗರಾದವಿದರ ರ
ಸಾತಿಶಯವರಿಯದವ ನರಮೃಗವೆಂದನಾ ಶಕುನಿ ೩೮

ಅರಸ ಕೇಳ್ ಕಾಳಗಕೆ ಜೂಜಿಗೆ
ಕರೆದಡೋಸರಿಸಿದೊಡೆ ಬಳಿಕವ
ಗರುವನೇ ಕ್ಷತ್ರಿಯರೊಳಗೆ ನೃಪಧರ್ಮ ನೀನರಿಯ
ಕರೆದೆವಾವ್ ಜೂಜಿಂಗೆ ಬೇಕೇ
ಧರಣಿಪತಿ ಬಾ ರಾಜಧರ್ಮವ
ನೊರಸುವರೆ ನಿಲ್ಲೆಂದುಪೇಕ್ಷಿಸಿ ನುಡಿದನಾ ಶಕುನಿ ೩೯

ರಾಜಧರ್ಮವಿದಹುದು ಕಳವಿನ
ಜೂಜು ಧರ್ಮದ ಮಗನೊ ಮೊಮ್ಮನೊ
ಬೀಜವಾವುದು ನಿಮ್ಮ ಕಪಟದ್ಯೂತ ನಿರ್ಣಯಕೆ
ರಾಜ ಪರಿಪಾಟಿಗಳ ಪಂಥದ
ಜೂಜ ಬಲ್ಲರೆ ಕರೆಯಿ ಬಾರದ
ಡಾ ಜನಾರ್ದನನಾಣೆಯೆಂದನು ಧರ್ಮನಂದನನು ೪೦

ಭೂರಮಣ ಕೇಳಖಿಳ ನೃಪ ಸಂ
ಹಾರಬೀಜದ ಕರ್ಮಫಲ ಸಂ
ಸ್ಕಾರವಳ್ಳಿಯನಿರಿದು ನೂಕಿತು ಧರ್ಮನಂದನನ
ಧೀರನಲ್ಲಾ ಧರ್ಮಶಾಸ್ತ್ರ ವಿ
ಚಾರ ಸಾರಜ್ಞಾನ ನಿಷ್ಠೆಯೊ
ಳೋರೆಯುಂಟೇ ದ್ಯೂತಕೇಳಿಗೆ ಮಾಡಿದನು ಮನವ ೪೧

ಇಂದುವದನೆಗೆ ದಕ್ಷಿಣಾಕ್ಷಿ
ಸ್ಪಂದವಾಯಿತು ಭೀಮ ಪಾರ್ಥರಿ
ಗಂದು ಕೆತ್ತಿತು ಹೃದಯ ವಾಮ ಭುಜಾಕ್ಷಿಗಳು ಸಹಿತ
ಕಂದಿದುವು ಮೋರೆಗಳು ಗಂಗಾ
ನಂದನ ದ್ರೋಣಾದಿ ಸುಜನರಿ
ಗಂದವೇರಿತು ಮುಸುಡು ಶಕುನಿ ಸುಯೋಧನಾದಿಗಳ ೪೨

ಕುರುಪತಿಯ ಕೃತಪುಣ್ಯಬೀಜಾಂ
ಕುರದ ಕಾಲ ದಿಗಂತದವನೀ
ಶ್ವರ ಸಮೂಹ ಚಮೂನಿಬರ್ಹಣ ಸೂಚನಾ ಸಮಯ
ಅರಸ ಕೇಳ್ ಕುಂತೀಕುಮಾರರ
ಸಿರಿಯ ದುಗುಡದ ಹೊತ್ತು ಮಿಗೆ ಗ
ಬ್ಬರಿಸಿತೈ ಧರ್ಮಜನ ಗಾಢದ ಬುದ್ಧಿಪರ್ವತವ ೪೩

ವ್ಯಸನತೃಷ್ಣೆಯು ಕೀಳು ಚಿತ್ತದ
ಮಿಸುನಿಯೊಳು ಬೆರೆಸಿತು ಸುಬುದ್ಧಿಯ
ರಸವು ಹಾರಿತು ಹುದಿದ ರಾಗದ್ವೇಷ ವಹ್ನಿಯಲಿ
ಮುಸುಡ ತಿರುಹಿತು ತಿಳಿವು ಲಜ್ಜೆಯ
ದೆಸೆಗೆ ದುರ್ಘಟವಾಯ್ತು ಪರಿಭವ
ದೊಸಗೆಯನು ಸೂಚಿಸಿತು ಲಕ್ಷ್ಮಿಗೆ ಧರ್ಮಜನ ಹೃದಯ ೪೪

ಹಲವು ಮಾತಿನಲೇನು ಭೂಪತಿ
ಕೆಲಕೆ ಸಿಲುಕಿದನವದಿರೊಡ್ಡಿದ
ಬಲೆಗೆ ಬಂದನು ನೆತ್ತ ಸಾರಿಯ ಗುರಿಯ ಗದ್ದುಗೆಗೆ
ಕೆಲದಲನುಜರು ವಾಮದಲಿ ಮಣಿ
ವಳಯ ಮಂಚದಲಂಧನೃಪನಿದಿ
ರಲಿ ಸುಯೋಧನ ಕರ್ಣ ಶಕುನಿ ಜಯದ್ರಥಾದಿಗಳು ೪೫

ಹಲಗೆಯಿಕ್ಕಿತು ಹೊನ್ನ ಸಾರಿಗ
ಳುಲುಹಿದವು ಹೇಳೊಡ್ಡವನು ಕಳ
ಕಳವ ನಿಲ ಹೇಳೆನುತ ಹಾಸಂಗಿಗಳ ಹೊಸೆ ಹೊಸೆದು
ನೆಲಕೆ ಹಾಯ್ಕಿದನಡಿಗಡಿಗೆ ಮಂ
ಡಳಿಸಿ ಸಾರಿಯ ಹೂಡಿ ಕುರುಪತಿ
ಗೆಲಿದ ಹೋಗೆಂದೊದರುತಿದ್ದನು ತೊಡೆಯನಪ್ಪಳಿಸಿ ೪೬

ಆಟವಾರಂಭಿಸದು ಬರಿ ಬೊ
ಬ್ಬಾಟವೇತಕೆ ವಿಜಯಸಿರಿ ವಾ
ಚಾಟರಿಗೆ ಮೆಚ್ಚುವಳೆ ತೋರಾ ದ್ಯೂತ ಕೌಶಲವ
ತೋಟಿ ಬೇಕೇ ಕೈಯ ಹೊಯ್
ಬೂತಾಟವೇತಕೆ ಧರ್ಮನಂದನ
ನಾಟವೊಳ್ಳಿತು ಬಲ್ಲೆನೆಂದನು ಶಕುನಿ ನಸುನಗುತ ೪೭

ಎನ್ನ ಲೆಕ್ಕಕೆ ಶಕುನಿ ಭೂಪತಿ
ನಿನ್ನೊಡನೆ ಕೈಹೊಯ್ದುನೊಡ್ಡವ
ನೆನ್ನೊಡನೆ ಹೇಳೆಂದು ನುಡಿದನು ಕೌರವರರಾಯ
ನಿನ್ನೊಳಾಗಲಿ ನಿನ್ನ ಮಾವನೆ
ಮುನ್ನ ಬರಲಿದಕೇನೆನುತ ಸಂ
ಪನ್ನ ಶಠರೊಡನಳವಿಗೊಟ್ಟವನೀಶನಿಂತೆಂದ ೪೮

ಹೇಮ ಭಾರದ ವಿಮಲ ರತುನ
ಸ್ತೋಮವಿದೆ ಪಣವೆನಲು ಕೌರವ
ಭೂಮಿಪತಿಯೊಡ್ಡಿದನು ಧರ್ಮಜ ಹೆಸರಿಸಿದ ಧನವ
ಆ ಮಹಿಪ ಶಕುನಿಗಳು ಸಾರಿ
ಗ್ರಾಮವನು ಕೆದರಿದರು ದ್ಯೂತದ
ತಾಮಸದಲುಬ್ಬೆದ್ದು ದಿಬ್ಬರ ಕರಣವೃತ್ತಿಗಳು ೪೯

ದುಗನ ಹಾಯಿಕು ತನಗೆ ಹಾಯ್ಕಿ
ತ್ರಿಗನವೆಂಬಬ್ಬರದ ಹಾಸಂ
ಗಿಗಳ ಬೊಬ್ಬೆಯ ಸಾರಿಗಳ ಮಣಿ ಖಟಿಲ ನಿಸ್ವನವ
ಉಗಿವ ಸೆರೆಗಳ ಬಳಿ ದುಹಾರದ
ಬಿಗುಹುಗಳ ಬೀದಿಗಳ ತಳಿ ಸಾ
ರಿಗಳ ಧಾಳಾಧೂಳಿ ಮಸಗಿತು ಭೂಪ ಕೇಳೆಂದ ೫೦

ರಾಯ ಸೋತನು ಶಕುನಿ ಬೇಡಿದ
ದಾಯ ತಹ ಹಮ್ಮಿಗೆಯಲೊದಗಿದ
ವಾಯತದ ಕೃತ್ರಿಮವಲೇ ಕೌರವರ ಸಂಕೇತ
ಆಯಿತೀ ಹಲಗೆಯನು ಕೌರವ
ರಾಯ ಗೆಲಿದನು ಮತ್ತೆ ಪಣವೇ
ನಾಯಿತೆಂದನು ಶಕುನಿ ಯಮನಂದನನನೀಕ್ಷಿಸುತ ೫೧

ಕನಕಮಯ ರಥವೆರಡು ಸಾವಿರ
ಮೊನೆಗೆ ಹೂಡಿದವೆಂಟು ಸಾವಿರ
ವಿನುತ ವಾಜಿಗಳೊಡ್ಡವೆಂದನು ಧರ್ಮನಂದನನು
ಜನಪತಿಗೆ ತಾನೈಸಲೇ ಹಾ
ಯ್ಕೆನುತ ಸಾರಿಯ ಕೆದರಿದನು ದು
ರ್ಜನರಿಗೊಲಿದುದು-ದೈವಗತಿ ಬೊಬ್ಬಿರಿದನಾ ಶಕುನಿ ೫೨

ಸೋತೆಯರಸಾ ನಿನಗೆ ಜೂಜಿನ
ಭೀತಿಯುಂಟೇ ಮಾಣು ಮೇಣ್ ನಿ
ರ್ಭೀತನೇ ನುಡಿ ಮೇಲಣೊಡ್ಡವ ಹಲವು ಮಾತೇನು
ಕಾತರಿಸಬೇಡೆನಲು ಘಡ ಪಣ
ಭೀತನೇ ತಾನಕಟೆನುತ ಕುಂ
ತೀತನುಜನೊಡ್ಡಿದನು ಸಾವಿರ ಮತ್ತಗಜ ಘಟೆಯ ೫೩

ಆದವೆಮಗಿವು ಗಜ ಘಟೆಗಳೆಂ
ದಾ ದುರಾತ್ಮಕನಾಡಿದನು ದು
ರ್ಭೇದವಿವದಿರ ಕಪಟ ಮಂತ್ರವನಾವನರಿವವನು
ಆದುದರಸಗೆ ಸೋಲವಿನ್ನೇ
ನಾದುದೈ ಭೂಪತಿಯೆ ಗಜಘಟೆ
ತೀದವೇ ಮೇಲೇನು ಪಣವುಂಟೆಂದನಾ ಶಕುನಿ ೫೪

ಘಡ ದರಿದ್ರನೆ ತಾನು ತನ್ನಯ
ಮಡದಿಯರ ಕೆಳದಿಯರು ಸಾವಿರ
ಮಡಿ ಸುಯೋಧನ ರಾಜಭವನದ ವಾರನಾರಿಯರ
ನುಡಿಯಬೇಕೇ ಧರ್ಮಸುತ ನಿ
ಮ್ಮಡಿಗಳೊಡ್ಡಿದ ಬಳಿಕ ಗೆಲಿದವ
ರೊಡವೆಯೈಸಲೆ ಹಾಯ್ಕು ಹಾಯ್ಕೆಂದೊದರಿದನು ಶಕುನಿ ೫೫

ಏನನಾಡಿದಡೇನು ಫಲ ದೈ
ವಾನುಕೂಲ್ಯದ ಕಣಿಕೆ ಬೇರಹು
ದಾ ನರೇಂದ್ರನ ಸಾರಿ ಸೋತುದು ನಿಮಿಷ ಮಾತ್ರದಲಿ
ಆ ನಿರೂಢಿಯ ಹತ್ತು ಸಾವಿರ
ಮಾನಿನಿಯರನು ಮತ್ತೆ ಸೋತನು
ಮಾನನಿಧಿಯೇ ಮತ್ತೆ ಪಣವೇನೆಂದನಾ ಶಕುನಿ ೫೬

ಅರಸಿಯರ ಮೈಗಾಹುಗಳ ಕಿಂ
ಕರರು ಸಾವಿರವಿದೆ ಪಣ ನಿ
ಮ್ಮರಸನಲಿ ಪಣವೇನೆನಲು ನೀವೇನನೊಡ್ಡಿದಿರಿ
ಮರಳಿ ಬೆಸಗೊಳಬೇಡ ನಮ್ಮಲಿ
ಬರಹವದು ಹಾಯ್ಕೆನುತ ಸಾರಿಯ
ಬೆರಸಿ ತಿವಿದಾಡಿದನು ಹೆಕ್ಕಳವಿಕ್ಕಿದನು ಶಕುನಿ ೫೭

ಅರಸ ಸೋತೈ ನಾರಿಯರ ಜಯ
ಮರಳಿತಿತ್ತಲು ಮನಕೆ ಭೀತಿಯ
ಬೆರಕೆಯುಳ್ಳಡೆ ಬಿಟ್ಟು ಕಳೆ ಪೈಸರಕೆ ಸಮಯವಿದು
ಅರಸು ಪಂಥದ ವಾಸಿ ಮನಕು
ಬ್ಬರಿಸುವೊಡೆ ಪಣವೇನು ಹೇಳೈ
ಧರಣಿಪಾಲಯೆನುತ್ತ ರಿಂಗಣಗುಣಿದನಾ ಶಕುನಿ ೫೮

ಎಲವೊ ಸೌಬಲ ಪಾಂಡುವಿನ ಮ
ಕ್ಕಳು ಕಣಾ ಚತುರಂಬುನಿಧಿ ಮೇ
ಖಲೆಯ ಉತ್ತರ ಕುರು ನರೇಂದ್ರರ ಸೀಮೆಪರಿಯಂತ
ನೆಲವಿದೆಮ್ಮದು ನೃಪರೊಳಗೆ ನಾ
ವುಳಿಯೆ ಧರಣಿಪರಾರು ರಥ ಸಂ
ಕುಳವನೊಡ್ಡುವೆನೊಂದು ಬಾರಿಗೆ ಹತ್ತು ಸಾವಿರವ ೫೯

ಈ ರಥಕೆ ನಾಲ್ವತ್ತು ಸಾವಿರ
ವಾರುವಂಗಳ ಕೂಟವಾ ಪರಿ
ವಾರವಿದೆಲಾ ರಪಣವೆಂದನು ಸುಬಲತನಯಂಗೆ
ವೀರನಹೆಯೈ ಧರಣಿಪತಿ ತೆಗೆ
ಸಾರಿಗಳ ಬಿಡು ಸೆರೆಯ ಬಿಗಿದು ದು
ಹಾರದಲಿ ನೀ ಸೋತೆ ಹೋಗೆಂದೊದರಿದನು ಶಕುನಿ ೬೦

ಆವ ಕೌಳಿಕ ಮಂತ್ರತಂತ್ರದ
ಡಾವರದ ಡೊಳ್ಳಾಸವಿಕ್ಕಿದ
ದೀವಸದ ಬೇಳುವೆಯನೇನೆಂಬೆನು ಮಹೀಪತಿಯ
ಆವ ವಸ್ತುವನರಸನೊಡ್ಡುವ
ನಾವ ವಹಿಲದಲಾತ ಸೋಲಿಸಿ
ಕೈವಳಿಸಿದನೊ ಬಲ್ಲನಾವವನೆಂದನಾ ಮುನಿಪ ೬೧

ಅರಸ ನೀಗಿದೆ ಹತ್ತು ಸಾವಿರ
ವರ ರಥವನಿನ್ನೇನು ಸಾಕೀ
ಸರಲಿ ನಿಲುವದು ವಿತ್ತವುಂಟೇ ಮತ್ತೆ ಹೇಳೆನಲು
ಮರುಳೆ ಸೌಬಲ ಚಿತ್ರರಥನೀ
ನರಗೆ ಕೊಟ್ಟನು ತೇಜಿಗಳ ತಿ
ತ್ತಿರಿಯ ಬಣ್ಣದ ಹತ್ತು ಸಾವಿರ ತುರಗವಿವೆಯೆಂದ ೬೨

ಆಡಿದನು ನೃಪನಾ ಕ್ಷಣಕೆ ಹೋ
ಗಾಡಿದನು ಖೇಚರರ ಖಾಡಾ
ಖಾಡಿಯಲಿ ಝಾಡಿಸಿದ ಹಯುವನು ಹತ್ತು ಸಾವಿರವ
ಹೂಡಿದನು ಸಾರಿಗಳ ಮರಳಿ
ನ್ನಾಡುವರೆ ಪಣವಾವುದ್ಯೆ ಮಾ
ತಾಡಿಯೆನೆ ಮನದಲಿ ಮಹೀಪತಿ ಧನವ ಚಿಂತಿಸಿದ ೬೩

ಅಗಣಿತದ ಧನವುಂಟು ಹಾಸಂ
ಗಿಗಳ ಹಾಯಿಕು ಸೋತ ವಸ್ತುವ
ತೆಗೆವೆನೀಗಳೆ ಶಕುನಿ ನೋಡಾ ತನ್ನ ಕೌಶಲವ
ದುಗುಣ ಹಲಗೆಗೆ ಹತ್ತು ಮಡಿ ರೇ
ಖೆಗೆ ಗಜಾಶ್ವನಿಕಾಯ ರಥ ವಾ
ಜಿಗಳು ಸಹಿತಿದೆ ಸಕಲ ಸೈನಿಕವೆಂದನಾ ಭೂಪ ೬೪

ಆಯಿತಿದು ಪಣವಹುದಲೇ ನೃಪ
ಹಾಯಿಕಾ ಹಾಸಂಗಿಗಳ ಸಾ
ಹಾಯ ಕುರುಪತಿಗಿಲ್ಲ ಕೃಷ್ಣಾದಿಗಳು ನಿನ್ನವರು
ದಾಯ ಕಂದೆರೆವರೆ ಸುಯೋಧನ
ರಾಯನುಪಚಿತಪುಣ್ಯವಕಟಾ
ದಾಯವೇ ಬಾಯೆಂದು ಮಿಗೆ ಬೊಬ್ಬಿರಿದನಾ ಶಕುನಿ ೬೫

ಮತ್ತೆ ಹೇಳುವುದೇನ ಸೋಲವ
ಬಿತ್ತಿ ಬೆಳೆದನು ಭೂಪನವರಿಗೆ
ತೆತ್ತನೈ ಸರ್ವಸ್ವ ಧನವನು ಸಕಲ ಸೈನಿಕನ
ಮತ್ತೆ ಪಣವೇನೆನಲು ಬಳಿಕರು
ವತ್ತು ಸಾವಿರ ಕರಿಕಳಭವೆಂ
ಬತ್ತು ಸಾವಿರ ತುರಗ ಶಿಶುಗಳನೊಡ್ಡಿದನು ಭೂಪ ೬೬

ಅರಸ ಕೇಳೀ ತುರಗವೀ ರಥ
ಕರಿ ನಿಕರವೀ ಸೈನ್ಯ ಹಸ್ತಿನ
ಪುರಿಗೆ ಬಂದುದು ತಮ್ಮ ಕೂಡೆ ವಿನೋದಕೇಳಿಯಲಿ
ಕುರುಪತಿಯ ವಶವಾಯ್ತು ಬಳಿಕಿನ
ಮರಿಗುದುರೆ ಮರಿಯಾನೆಗಳನು
ಚ್ಚರಿಸಿ ಸಾರಿಯ ಸೋಕಿದಾಗಲೆ ಸೋತನಾ ಭೂಪ ೬೭

ಅಕಟ ಸಾಲದೆ ಜೂಜು ನಿರ್ಬಂ
ಧಕವೆ ಶಿವಶಿವ ತಾನಿದೆತ್ತಣ
ಶಕುನಿಯೆತ್ತಣ ಭರತಕುಲದ ಮಹಾ ಮಹೀಶ್ವರರು
ವಿಕಳ ಚೇಷ್ಟೆಯದೇನು ವೃದ್ಧ
ಪ್ರಕರಕಿದು ವಿಳಸವೆ ವಿಘಾತಿಗೆ
ಸಕಲಜನ ಸಮ್ಮತವೆಯೊಂದನು ಖಾತಿಯಲಿ ವಿದುರ ೬೮

ವರ ಪುರೂರವ ನಹುಷನವನೀ
ಶ್ವರತಿಲಕ ದುಷ್ಯಂತ ಕುರು ಸಂ
ವರಣನಮಲ ಯಯಾತಿಯಾದಿ ಪರಂಪರಾಗತದ
ಭರತ ಕುಲವಿದರೊಳಗೆ ವಂಶೋ
ದ್ಧರರಿಳೆಯ ಬೆಳಗಿದರು ನೀನವ
ತರಿಸಿ ತಂದ್ಯೆ ತೊಡಕನೆಂದನು ಖಾತಿಯಲಿ ವಿದುರ ೬೯

ಸೋಲ ಮಚ್ಚಿದುದಿವರನೊಡ್ಡದ
ಮೇಲೆ ಹೇರಿದುದೊಡ್ಡವೀಗಳು
ಮೇಲುಗೈ ನೀನಾದೆ ಕುಸಿದರು ಪಾಂಡು ನಂದನರು
ಸೋಲವಿದು ಕಾಲಾಂತಕನ ಮೈ
ಸಾಲ ಸಾರಿದೆನಕಟ ಸಾಕಿ
ನ್ನೇಳು ಕೌರವ ನೃಪತಿಯೆಂದನು ಖಾತಿಯಲಿ ವಿದುರ ೭೦

ಗೆಲಿದ ಧನವಕ್ಕುವುದೆ ಸೋತವ
ರಳುಕಿದವರೇ ಪಾಂಡುಪುತ್ರರ
ಬಲುಹ ಬೆಸಗೊಳ್ಳಾ ತದೀಯ ಶ್ರವಣ ದೃಷ್ಟಿಗಳ
ಎಲೆ ಸುಯೋಧನ ವಿಷದ ಮಧುರವು
ಕೊಲುವುದೋ ಮನ್ನಿಸುವುದೋ ಕ
ಕ್ಕುಲಿತೆಗಿದು ಕಡೆಹಾರವಾಗಲಿ ಸಾಕು ತೆಗೆಯೆಂದ ೭೧

ಗೆಲಿದ ದರ್ಪದ ದಡ್ಡಿ ತೆಗೆ ಸೌ
ಬಲನ ಬೀಳ್ಕೊಡು ನಿಖಿಲ ಬಾಂಧವ
ಕುಲಸಹಿತ ನೀ ಮಧುರ ವಚನದಲಿವರ ಸಂತೈಸು
ನೆಲನನೇಕಚ್ಛತ್ರದಲಿ ಹದ
ಗೊಳಿಸು ಬದುಕುವರಿದು ನಿಜಾನ್ವಯ
ದುಳಿವು ಬೆಸಗೊಳು ಬೇಹ ಹಿರಿಯರನೆಂದನಾ ವಿದುರ ೭೨

ಖೂಳನೆಂಬೆನೆ ಸಕಲ ಕಲೆಗಳ
ಬಾಳುಮನೆ ಗಡ ನಿನ್ನ ಬುದ್ಧಿ ವಿ
ಶಾಲಮತಿ ನೀನೆಂಬೆನೇ ಜಗದಜ್ಞರಧಿದೈವ
ಕೇಳಿದೊಡೆ ಮೇಣಹಿತ ಹಿತವನು
ಹೇಳುವದು ಪಾಂಡಿತ್ಯ ನಿನ್ನನು
ಕೇಳಿದವರಾರೆಂದು ಜರೆದನು ಕೌರವರಾಯ ೭೩

ಹಿತವ ನೀನವರಿಗೆ ಕುಟುಂಬ
ಸ್ಥಿತಿ ವಿಡಂಬಕೆ ನಾವು ಕುಂತೀ
ಸುತರೊಡನೆ ಸಮ್ಮೇಳವೆಮ್ಮೊಳು ವೈಮನಸ್ಯಗತಿ
ಕೃತಕ ಮಾರ್ಗದ ಮೋಡಿಯಲಿ ಪರಿ
ಚಿತನು ನೀನಲ್ಲಕ್ಷ ವಿಮಲ
ಕ್ರತು ವಿಧಾನವನಕ್ಷ ದೀಕ್ಷಿತರರಿವರಿದನೆಂದ ೭೪

ನೀ ಹಿತವನೈ ಶಕುನಿ ರಾಜ
ದ್ರೋಹಿಯೈ ಹುಸಿಯಲ್ಲ ನೀನೇ
ಹೋಹುದೈ ನಿನಗಾವುದಭಿಮತವಾ ದಿಗಂತರಕೆ
ಐಹಿಕಾಮುಷ್ಮಿಕದ ವಿಭವೋ
ತ್ಸಾಹ ನಿಸ್ಪೃಹರಾವಲೇ ಸಂ
ದೇಹವೇ ನೀವರಿವಿರೆಂದನು ತೂಗಿ ತುದಿವೆರಳ ೭೫

ಗುರುಗಳುಂಸುರರು ಭೀಷ್ಮರೆಮ್ಮನು
ಕೆರಳಿಚರು ಕೃಪ ನುಡಿಯನಯ್ಯನ
ಕೊರಳು ಕೊಂಕದು ಬಾಹ್ಲಿಕನ ಮನ ನೋಯದಿನ್ನೆಬರ
ಹಿರಿಯರಿವರೇನಜ್ಞರೇ ನೀ
ಪರಮತತ್ವಜ್ಞಾನಿಯೇ ಕಾ
ತರಿಸದಿರು ನೀನೆಂದು ಟಕ್ಕರಿಗಳೆದನಾ ಭೂಪ ೭೬

ಇವರ ಜನಪಾಧ್ವರವನಡ ಹಾ
ಯ್ದು ವನನಾಗಳೆ ದೇವಕೀಸುತ
ಸವರಿದನು ನಮ್ಮಿ್ಮ ವಿನೋದದ್ಯೂತ ಸಂಪದದ
ಸವನ ವಿಘ್ನವಿಕಾರಿಯನು ಪರಿ
ಭವಿಸುವವರನು ಕಾಣೆ ಶಿವಯೆಂ
ದವವನಿಪತಿ ನಿಜ ಹುಬ್ಬಿನಲಿ ಹೂಳಿದನು ಪರಿಚರರ ೭೭

ಮಣಿಯೆ ನೀನೀಲ್ಲೀಯಯನರ್ಥವ
ಕುಣಿಕೆಗೊಳಿಸಿದ ನೀ ಸಹಿತ ನಿ
ನ್ನೆಣೆಗಳಹ ಸೈಂಧವನನೀ ರಾಧೇಯ ಶಕುನಿಗಳ
ರಣದೊಳಗೆ ಭೀಮಾರ್ಜುನರ ಮಾ
ರ್ಗಣದ ಧಾರೆಗೆ ವೀರನಾರಾ
ಯಣನೆ ಸೇರಿಸಿಕೊಡುವನರಿದಿರುಯೆಂದನಾ ವಿದುರ ೭೮

ಹದಿನಾಲ್ಕನೆಯ ಸಂಧಿ

ಸೂ. ರಾಯ ಪಾಂಡವರರಸಿ ಕಮಲ ದ
ಳಾಯತಾಕ್ಷಿಯ ಪರಿಭವವನೆರೆ
ಕಾಯಿದುದೆಲಾ ವೀರ ನಾರಾಯಣನ ಸಿರಿನಾಮ

ಕೇಳು ಜನಮೇಜಯ ಧರಿತ್ರೀ
ಪಾಲ ವಿದುರನ ಮಾತ ಮುರಿದು ನೃ
ಪಾಲನೆಚ್ಚರಿಸಿದನು ಕಣುಸನ್ನೆಯಲಿ ಸೌಬಲನ
ಏಳು ಧರ್ಮಜ ಸೋತೆಲಾ ನಿ
ನ್ನಾಳು ಕುದುರೆಯನಿನ್ನು ಸಾಕು ದ
ಯಾಳುವಲ್ಲ ಸುಯೋಧನನು ಧನವಿಲ್ಲ ನಿನಗೆಂದ ೧

ತೆಗೆವೆನೇ ಸಾರಿಗಳ ನಿನ್ನೀ
ನಗೆಮೊಗದ ಸಿರಿ ಸೀದು ಕರಿಯಾ
ಯ್ತುಗುಳುತಿದೆ ನಿನ್ನನುಜರಿಂಗಿತ ರೋಷಪಾವಕನ
ಸೊಗಸು ಬೀಯದು ರಪಣವಿಲ್ಲದ
ಬೆಗಡು ನೋಯದು ಕ್ಷತ್ರಧರ್ಮದ
ತಗಹು ಸಾಯದು ನಿನಗೆನುತ ಗಹಗಹಿಸಿದನು ಶಕುನಿ ೨

ಎಲವೊ ಸೌಬಲ ವಿತ್ತವೀಸರ
ಳಿದುದೇ ನೀ ನಗುವವೋಲ್ನ
ಮ್ಮೊಳಗು ಡಿಳ್ಳವೆ ರಪಣವಿದೆಲಾ ಬಹಳ ಭಂಡಾರ
ಸುಳಿಸು ಹಾಸಂಗಿಗಳ ಮೋಹರ
ಗೊಳಿಸು ಸಾರಿಯನೊಂದು ರೇಖೆಯ
ಬಳಿಯಲೊಂದೇ ಕೋಟಿ ಧನವೆಂದೊದರಿದನು ಭೂಪ ೩

ದುಗುಣಕಿಕ್ಕಿದನರಸನಾಚೆಗೆ
ತೆಗೆದನವ ಮೂರೆಂದು ನಾಲ್ಕ
ಕ್ಕೆಗಿದನವನಿಪನೈದ ಕಳೆದನು ಬಹಳವನು ಶಕುನಿ
ತೆಗೆದ ನಿಮ್ಮಡಿಗರಸನವನಾ
ತ್ರಿಗುಣ ಪಂಚಕ ಸಪ್ತ ನವಮ
ಪ್ರಗುಣವೆಂದನು ಶಕುನಿ ಸೋಲಿಸಿದನು ಮಹೀಪತಿಯ ೪

ಎಣಿಸಿದನು ರೇಖೆಗಳ ನಿಮ್ಮಡ
ಗಣಿತ ಸಂಖ್ಯಾ ಸಿದ್ಧವಸ್ತುವ
ನೆಣಿಸಲರ್ಬುದ ಸಂಖ್ಯೆಯಾಯಿತು ಹಲಗೆಯೊಂದರಲಿ
ಗುಣನಿಧಿಯೆ ಮಗುಳೊಡ್ಡಲಾಪರೆ
ಪಣವ ಸಬುದಿಸು ಕೇಳ್ವೆನೆನೆ ನೃಪ
ಗುಣಶಿರೋಮಣಿ ಧರ್ಮಸುತ ನಸು ನಗುತಲಿಂತೆಂದ ೫

ಹೂಡು ಸಾರಿಯ ರೇಖೆ ರೇಖೆಗೆ
ಮಾಡಿದರ್ಬುದ ಧನ ಸುಯೋಧನ
ನಾಡಿ ನೋಡಲಿ ಹಾಯ್ಕು ಹಾಸಂಗಿಗಳ ಹಾಯ್ಕೆನುತ
ಆಡಿದನು ಯಮಸೂನು ಖಾಡಾ
ಖಾಡಿಯಲಿ ಸಾರಿಗಳೊಡನೆ ಹೋ
ಗಾಡಿದನು ಭಂಡಾರವನು ಭೂಪಾಲ ಕೇಳೆಂದ ೬

ಸಾರಿ ಸೋತವು ಸೋಲು ನಿನಗನು
ಸಾರಿ ನೀವೈವರು ವನಾಂತಕೆ
ಸಾರಿ ಸಾಕಿನ್ನೊಡ್ಡಲಾಪರೆ ಮತ್ತೆ ನುಡಿ ಧನವ
ಭೂರಮಣ ಹೇಳೆನಲು ರೇಖೆಯ
ಭಾರಿಯೊಡ್ಡಕೆ ಪದ್ಮ ಸಂಖ್ಯೆಯ
ಭೂರಿ ಧನವಿದೆ ರಪಣವೆಂದನು ನಗುತ ಯಮಸೂನು ೭

ಬರಹಕಿಮ್ಮಡಿ ನೂರು ಮಡಿ ಸಾ
ವಿರದ ಮಡಿ ಪರಿಯಂತವಿಕ್ಕಿತು
ಹರುಷ ನನೆ ಕೊನೆಯಾಯ್ತು ಹೆಚ್ಚಿತು ಕಲಿಮಲಾವೇಶ
ಸ್ಥಿರವೆ ಹಿಂಗಿತು ವಾಸಿ ಪಾಡಿನ
ದುರುಳತನವುಬ್ಬೆದ್ದು ದಡಿಗಡಿ
ಗರಸನೊಡ್ಡಿದ ಮೇಲೆ ಮೇಲೊಡ್ಡವನು ವಿರಚಿಸಿದ ೮

ತೀರಿತಿಂದ್ರಪ್ರಸ್ಥದುರು ಭಂ
ಡಾರ ತನ್ನರಮನೆಯ ಪೈಕದ
ವಾರಕದ ಭಂಗಾರವೊಡ್ಡಿತು ಕೋಟಿ ಸಂಖ್ಯೆಯಲಿ
ಸೇರಿತದು ಕುರುಪತಿಗೆ ರಾಯನ
ನಾರಿಯರ ವಿವಿಧಾಭರಣ ಸಿಂ
ಗಾರವೊಡ್ಡಿತು ಕೊಂಡು ಮುಳುಗಿತು ಖಡ್ಡತನ ನೃಪನ ೯

ನಕುಲ ಸಹದೇವಾರ್ಜುನರ ಮಣಿ
ಮಕುಟ ಕರ್ಣಾಭರಣ ಪದಕಾ
ದಿಕ ಸಮಸ್ತಾಭರಣವೊಡ್ಡಿತು ಹಲಗೆಯೊಂದರಲಿ
ವಿಕಟ ಮಾಯಾ ವಿಷಮ ಕರ್ಮವ
ನಕಟ ಬಲ್ಲನೆ ಸಾಧುಜನ ಸೇ
ವಕನು ಸೋತನು ಸಾಧ್ಯವಹುದೇ ವಿಧಿಯ ಮುಳಿಸಿನಲಿ ೧೦

ಸೋತೆಲಾ ಕೌಂತೇಯ ನಿಮಿಷಕೆ
ಬೀತುಂದೇ ನಿನ್ನಖಿಳ ಸಿರಿ ವಿ
ಖ್ಯಾತಿ ಬರತುದೆ ವೇಡೆಗೆದರಿತೆ ಮನದ ವಾಸಿಗಳ
ಪ್ರೀತಿಯುಂಟೇ ನಿಮಗೆ ಮತ್ತೀ
ದ್ಯೂತದಲಿ ಧನವಿಲ್ಲಲಾ ಗ
ರ್ವಾತಿರೇಕವ ಬೀಳುಗೊಂಡಿರೆಯೆಂದನಾ ಶಕುನಿ ೧೧

ಖಿನ್ನನಾದನು ರಾಜ್ಯಲಕ್ಷ್ಮಿಯ
ಬೆನ್ನ ಕಂಡನು ಬಳಚಿ ಹೋದ ನಿ
ಜೋನ್ನತಿಯಲವನೀಶನಿದ್ದನು ಮುರಿದ ಮಹಿಮೆಯಲಿ
ಇನ್ನು ಪಣವೇನೋ ವಿರೋಧಿಗ
ಳೆನ್ನ ಭಂಗಿಸಿ ನುಡಿದರಿದಕಿ
ನ್ನೆನ್ನನಿಕ್ಕಿ ದ್ಯೂತವಿಜಯವ ಸಾಧಿಸುವೆನೆಂದ ೧೨

ಎಲವೊ ಫಡ ಫಡ ಶಕುನಿ ಗರ್ವದ
ತಳಿ ಮುರಿವುದೇ ನಿನ್ನ ದುರ್ಮತಿ
ಗಳಿಗೆ ಹೂಡಿದ ದುರ್ಗವಿದೆ ತನ್ನಂತರಂಗದಲಿ
ಉಳಿದ ಧನವೇಗುವುದು ಜೀವ
ಸ್ಥಳವಿದೇ ಮೇಲೊಡ್ಡವೊಂದೇ
ಹಲಗೆಗೊಡ್ಡಿದೆನೆನ್ನ ನಕುಲನನೆಂದನಾ ಭೂಪ ೧೩

ವಾಸಿಗನುಜನನೊಡ್ಡಿದರೆ ನಮ
ಗೀಸರಲಿ ಭಯವೇನು ನೋಡುವೆ
ವೈಸಲೇ ನೃಪ ಹಾಯ್ಕು ಹಾಸಂಗಿಗಳ ಹಾಯ್ಕೆನುತ
ಆ ಶಕುನಿ ಪೂರ್ವಾರ್ಜಿತದ ಡೊ
ಳ್ಳಾಸದಲಿ ಡಾವರಿಸಿ ಧರ್ಮವಿ
ನಾಶಿ ನಕುಲನ ಗೆಲಿದು ಬೊಬ್ಬಿರಿದನವನಿಪನ ಜರೆದ ೧೪

ಅರಸ ಸೋತ್ತೆ ನಕುಲನನು ಹೇ
ವರಿಸದಿರು ಹೇಳೊಡ್ಡವನು ವಿ
ಸ್ತರಿಸಲೊಂದೇ ಹಲಗೆ ಸೋಲ್ವುದು ಹೇಳು ಹೇಳೆನಲು
ವರಿಸಿದೆನು ಸಹದೇವನನು ನೆರೆ
ಮರಳಿಚುವೆನೆನ್ನಖಿಳ ವಸ್ತೂ
ತ್ಕರವನೆಂದನು ಧರ್ಮನಂದನನರಸ ಕೇಳೆಂದ ೧೫

ಹರಿಬದಲಿ ತನ್ನಖಿಳ ವಸ್ತೂ
ತ್ಕರವ ಮರಳಿಚುವನು ಮಹೀಪತಿ
ಕಿರಿಯ ತಮ್ಮನವೊಡ್ಡಿದನು ಮಾದ್ರೀ ಕುಮಾರಕನ
ಅರಸ ದಾಯವೆ ಬಾ ಜಯಾಂಗದ
ಸಿರಿಯೆ ಬಾ ಕುರುರಾಯ ರಾಜೋ
ತ್ಕರುಷ ಸಿದ್ಧಿಯೆ ಬಾಯೆನುತ ಗರ್ಜಿಸಿದನಾ ಶಕುನಿ ೧೬

ಏನ ಬಣ್ಣಿಸುವೆನು ವಿಕಾರಿಗ
ಳೇನ ನೆನೆಯರು ಕಪಟ ವಿಧದಲಿ
ಮಾನನಿಧಿ ತಾ ಸೋತನನುಜದ್ವಯ ಮಹಾಧನವ
ಗ್ಲಾನಿಚಿತ್ತದೊಳಿಲ್ಲಲೇ ಸುಮ
ನೋನುರಾಗವೆ ಭೀಮ ಪಾರ್ಥರು
ತಾನಿದೊಮ್ಮಿಗೆ ಬದುಕಿದರು ನಿಮಗೆಂದನಾ ಶಕುನಿ ೧೭

ಭೇದ ಮಂತ್ರವ ಮಾಡಿ ನಮ್ಮನು
ಭೇದಿಸುವ ಗಡ ಸುಬಲ ಸುತನಕ
ಟೀ ದುರಾತ್ಮನ ನೋಡಿರೈ ಸಭ್ಯರು ಶಿವಾಯೆನುತ
ಆ ದುರಾಗ್ರಹಿ ಲೋಕಜನ ಪರಿ
ವಾದಪದನಿರ್ಭೀತನಕ್ಷ ವಿ
ನೋದ ಕರ್ದಮ ಮಗ್ನನೊಡ್ಡಿದನಾ ಧನಂಜಯನ ೧೮

ಎಲೆ ಧನಂಜಯ ನಿನ್ನನೊಡ್ಡಿದ
ಛಲಿ ಯುಧಿಷ್ಠಿರನಿಲ್ಲಿ ಸೋತರೆ
ಬಳಿಕ ನಿನ್ನನು ಮಾರಿದನಲಾ ಕೌರವೇಶ್ವರಗೆ
ತಿಳಿದು ಭೀಮಾರ್ಜುನರು ನೀವ್ ನಿ
ಮ್ಮೊಳಗೆ ಬಲಿದಿಹುದೆನಲು ಖತಿಯಲಿ
ಮುಳಿದು ಬೈದರು ಭೀಮ ಪಾರ್ಥರು ಸುಬಲ ನಂದನನ ೧೯

ದೇಹಿಗೆರವೇ ದೇಹವೆಲವೋ
ದೇಹಿ ಭೂಪತಿ ಧರ್ಮಪುತ್ರನ
ದೇಹವಾವಿದರೊಳಗೆ ನಿನ್ನ ಕುಮಂತ್ರ ಭಾವಿತದ
ಊಹೆಗೊಂಬುದೆ ಕಪಟದಿಂದವ
ಗಾಹಿಸುವೆ ಸಾಕಿನ್ನು ಮೇಲಣ
ಗಾಹುಗತಕಗಳೆಮ್ಮೊಳೆಂದರು ಜರೆದು ಸೌಬಲನ ೨೦

ಮೇಲೆ ಹೇಳುವುದೇನು ಸಾರಿಯ
ಸಾಲು ಮುರಿದುದು ಸೆರೆಯ ಕಳವಿನ
ಕಾಲು ಕೀಲ್ಗಳನಾರು ಬಲ್ಲರು ಕುಟಿಲ ಕೋವಿದರ
ಹೇಳುವದರಿಮ್ಮನ್ನ ಶಕುನಿಗೆ
ಬೀಳುವುದು ಬೇಕಾದ ದಾಯವು
ಕೌಳಿಕದ ವಿಧಿಪಾಶ ತೊಡಕಿತು ನೀಗಿತರ್ಜುನನ ೨೧

ಸೋತಿರರಸರೆ ಮತ್ತೆ ಹೇಳೀ
ದ್ಯೂತ ಶಿಖಿಗಾಹುತಿಯನೆನೆ ಕುಂ
ತೀತನುಜನೊಡ್ಡಿದನು ವಿಗಡ ಬಕಾಸುರಾಂತಕನ
ಆತುದೊಂದರೆಗೆಳಿಗೆ ಸೌಬಲ
ಸೋತ ಧರ್ಮಜ ಗೆಲಿದ ಧರ್ಮಜ
ಸೋತ ಸೌಬಲ ಗೆಲಿದನೆಂಬವೊಲಾಯ್ತು ಘನ ರಭಸ ೨೨

ಆ ಹಲಗೆ ಸೋತುದು ಯುಧಿಷ್ಠಿರ
ನೂಹೆ ಮುರಿದುದು ಮುಂದುಗೆಟ್ಟನು
ರಾಹು ಹಿಡಿದ ಹಿಮಾಂಶು ಮಂಡಲದುಳಿದ ಕಳೆಯಂತೆ
ತೋಹಿನಲಿ ತೊಟ್ಟಿಸಿದ ಮೃಗದವೊ
ಲೂಹೆಯುಳಿದುದು ಯಂತ್ರಸೂತ್ರದ
ಹೂಹೆಯಂತಿರೆ ನೃಪ ತೆತ್ತನು ಹಗೆಗೆ ತನುಧನವ ೨೩

ಜನಪ ಮಾರಿದೆ ಭೀಮಸೇನಾ
ರ್ಜನರು ಸಹಿತೊಡಹುಟ್ಟಿದರ ನಿ
ರ್ಧನಿಕನಾಗಿಯು ಮತ್ತೆ ಬಿಡದೇ ದ್ಯೂತದುರ್ವ್ಯಸನ
ಎನಲು ಶಕುನಿಯ ಜರೆದು ತಾನೇ
ಧನವಲಾ ಸಾಕೊಂದು ಹಲಗೆಯೊ
ಳೆನಗೆ ಜಯವೀ ದಾಯವೆಂದೊಡ್ಡಿದನು ಜನನಾಥ ೨೪

ಹೇಳಲೇನದನವರು ರಚಿಸಿದ
ಬೇಳುವೆಯನಾ ಶಕುನಿಯೊಡ್ಡಿದ
ಕಾಲು ಕುಣಿಕೆಯೊಳಾರು ಬೀಳರು ನೃಪತಿ ನಿಮಿಷದಲಿ
ಬೀಳುಗೊಟ್ಟನು ತನ್ನನಾ ಜನ
ಜಾಲವಿದ್ದುದು ಬಿಗಿದ ಬೆರಗಿನೊ
ಳಾಲಿಸುವಿರೇ ಜೀಯ ಪಣವೇನೆಂದನಾ ಶಕುನಿ ೨೫

ಎಲವೊ ಸೌಬಲ ಸಾಕಿದೊಂದೇ
ಹಲಗೆ ಸರ್ವಸ್ವಾಪಹಾರವ
ನಿಳುಹುವೆನು ನೀಲಾಳಕಿಯನೊಡ್ಡುವೆನು ಬಾಲಕಿಯ
ಉಳಿದ ಧನವೆಮ್ಮೈವರಿಗೆ ನಿ
ಷ್ಫಲಿತವಿದು ಹೂಡೆನಲು ಹರುಷದ
ಲಳಿಯ ಚೌಪಟಮಲ್ಲ ಸಾರಿಯ ಸಾಲ ಜೋಡಿಸಿದ ೨೬

ಆಡಿದನು ಯಮಸೂನು ಮಿಗೆ ಹೋ
ಗಾಡಿದನು ಮನುಮಥನ ಖಾಡಾ
ಖಾಡಿ ಖಾತಿಯನಕಟ ಮದನನ ಮಂತ್ರದೇವತೆಯ
ಕೂಡೆ ತಿವಿದನು ಕಟ್ಟಿದನು ಕಳಿ
ದೋಡಿಸಿದ ಸಾರಿಗಳ ಸೋಲದ
ಖೋಡಿಯನು ಚಿತ್ರಿಸಿದನರಸನ ಚಿತ್ತಭಿತ್ತಿಯಲಿ ೨೭

ಬೆರಗು ಬೆಳೆದುದು ಮನದ ಮಿಡುಕಿನ
ಮರುಕ ಮುಂದಲೆಗೊಟ್ಟುದರಿವಿನ
ಸೆರಗು ಹಾರಿತು ಲಜ್ಜೆ ಬೆಳಗಿತು ಬಿಟ್ಟ ಬೀದಿಯಲಿ
ಉರುಬಿತಪದೆಸೆ ರಾಜ್ಯಲಕ್ಷ್ಮಿಯ
ತುರುಬು ಕೈದೊಳಸಾಯ್ತು ಹಗೆಗಾ
ನರಿಯೆನರಸನ ವಿರಸ ಚೇತೋಭಾವ ಭಂಗಿಗಳ ೨೮

ಮೊಳೆನಗೆಯ ಕಟಕಿಗಳ ಹದಿರಿನ
ಹಳಿವುಗಳ ಸನ್ನೆಗಳ ಸವಿ ಬೈ
ಗುಳಿನ ಜಾಣಿನ ನೋಟಗಳ ಜೊತ್ತಿನ ನವಾಯಿಗಳ
ಒಳದೆಗಹಿನುಬ್ಬುಗಳ ಮಿಾಸೆಯೊ
ಳಳಿವ ಬೆರಳ್ಗಳ ಕರ್ಣ ಸೈಂಧವ
ಖಳತಿಲಕ ದುಶ್ಶಾಸನಾದಿಗಳಿದ್ದರೀಚೆಯಲಿ ೨೯

ಕಳಕಳದ ಕಂದೆರವೆಗಳ ಕುರು
ಕುಲದ ನಿರ್ಮೂಲನದ ನಿಶ್ಚಯ
ದೊಳಗುವರಿದಾಲೋಚನೆಯ ನಿರ್ದ್ರವದ ತಾಳಿಗೆಯ
ತಳಿತ ಮೋನದ ಬೀತ ಹರುಷದ
ಜಲದ ನಯನದಲಿದ್ದರಾ ವಿ
ಹ್ವಲರು ಭೀಷ್ಮ ವಿಕರ್ಣ ವಿದುರ ದ್ರೋಣ ಗೌತಮರು ೩೦

ಇಟ್ಟ ಮೂಗಿನ ಬೆರಳ ನೆಲದಲಿ
ನಟ್ಟ ದೃಷ್ಟಿಯ ಕಳವು ಜೂಜಿನ
ದಿಟ್ಟರಾಟಕೆ ಬಲಿದ ಬೆರಗಿನ ಬಿಗಿದ ಖಾತಿಗಳ
ತಟ್ಟಿಸುವ ರಿಪುವರ್ಗ ಶಿಖಿಯಲಿ
ಸುಟ್ಟ ಕರಣ ಚತುಷ್ಟಯದ ಜಗ
ಜಟ್ಟಿಗಳು ಭೀಮಾರ್ಜುನಾದಿಗಳಿರ್ದರೀಚೆಯಲಿ ೩೧

ಹಾಸ ಗರ್ವದ ಮೋನದಲಿ ಸಂ
ತೋಷ ಗರ್ವದ ದುಗುಡದಲಿ ಸುವಿ
ಳಾಸ ಗರ್ವದ ಖೇದದಲಿ ಮದಗರ್ವ ಚಿಂತೆಯಲಿ
ವೈಸಿಕದ ಕಣಿ ಕುಟಿಲ ಮಂತ್ರದ
ಮಿಾಸಲಳಿಯದ ಕುಹಕ ವಿದ್ಯಾ
ವಾಸಗೃಹ ಧೃತರಾಷ್ಟ್ರನಿದ್ದನು ವಿಕೃತ ಭಾವದಲಿ ೩೨

ಜನಪತಿಯ ಜಾಡ್ಯವನು ಭೀಮಾ
ರ್ಜುನರ ಸ್ವೈರಣೆಗಳನು ದುರ್ಯೋ
ಧನನ ದುಶ್ಚೇಷ್ಟೆಯನು ಶಕುನಿಯ ಸಾರ ಕೃತ್ರಿಮವ
ತನತನಗೆ ಕಂಡರು ಮಹೀಸುರ
ಜನಪ ವೈಶ್ಯ ಚತುರ್ಥರುಕ್ಕಿದ
ಮನದಳಲಿನಲಿ ಬೈದರಚ್ಯುತ ಹರ ಚತುರ್ಮುಖರ ೩೩

ನ್ಯಾಯವೆಮ್ಮದು ಮುನ್ನ ಸೋತಿರಿ
ಜೀಯ ನಿಮ್ಮೊಡ ಹುಟ್ಟಿದರು ಸಹಿ
ತಾಯತಾಕ್ಷಿಯ ಬಳಿಕ ಸೋತಿರಿ ಬಲುಹ ಮಾಡೆವಲೆ
ರಾಯನೊಲಿದುದ ಮಾಡಲಾವ
ನ್ಯಾಯವರ್ತಿಗಳಲ್ಲಲೇ ಬೆಸ
ಸಾ ಯುಧಿಷ್ಠಿರಯೆನುತ ಕೈಗಳ ಮುಗಿದನಾ ಶಕುನಿ ೩೪

ಗೆಲಿದು ಕೊಟ್ಟೆನು ಸಕಲ ಚಾತು
ರ್ಬಲವನಾ ಭಂಡಾರ ಸಹಿತ
ಗ್ಗಳೆಯರೈವರ ಕಮಲಮುಖಿಯನು ರಾಜ್ಯ ಸಿರಿಸಹಿತ
ಕಲಶವಿಟ್ಟೆನು ಕೊಟ್ಟ ಭಾಷೆಗೆ
ಎಲೆ ಸುಯೋಧನಯೆಂದು ನಯನಾಂ
ಗುಲಿಯ ಸಂಕೇತದಲಿ ಸನ್ನೆಯ ಮಾಡಿದನು ಶಕುನಿ ೩೫

ವಿದುರ ಬಾ ನಮ್ಮಾಕೆಯಾ ದ್ರೌ
ಪದಿಯ ಕರೆ ಬೆಸಗೊಂಬೆ ತೊತ್ತಿರ
ಸದನದಿಕ್ಕೆಯೊ ರಾಣಿವಾಸದ ಮನೆಯಪೇಕ್ಷಿತವೊ
ಬೆದರಬೇಡಿನ್ನಬುಜಮುಖಿಗಾ
ವುದು ಮನೋರಥವೆಮ್ಮೊಳುಂಟೆಂ
ಬುದು ಲತಾಂಗಿಯ ಕರೆವುದೆಂದನು ಕೌರವರರಾಯ ೩೬

ಸಿಡಿಲ ಪೊಟ್ಟಣಗಟ್ಟಿ ಸೇಕವ
ಕೊಡುವರೇ ಹರನೇತ್ರ ವಹ್ನಿಯೊ
ಳಡಬಳವ ಸುಡಬಗೆದೆಲಾ ಮರುಳೆ ಮಹೀಪತಿಯೆ
ಹೆಡತಲೆಯ ತುರಿಸುವರೆ ಹಾವಿನ
ಹೆಡೆಯನಕಟಾ ಪಾಂಡುಪುತ್ರರ
ಮಡದಿ ತೊತ್ತಹಳೇ ಶಿವಾ ಎಂದಳಲಿದನು ವಿದುರ ೩೭

ಕಾಳಕೂಟದ ತೊರೆಗಳಲಿ ಜಲ
ಕೇಳಿಯೇ ಕಾಲಾಂತಕನ ದಂ
ಷ್ಟ್ರಾಳಿಯಲಿ ನವಿಲುಯ್ಯಲೆಯ ನೀವಾಡಲಾಪಿರಲೆ
ಕಾಲರುದ್ರನ ಲಳಿಯ ನಾಟ್ಯದ
ಕೇಳಿಕೆಗೆ ನೀವರ್ತಿಕಾರರೆ
ಹೋಲದೋ ಶಿವಯೆನುತ ಕಂಬನಿಮಿಂಚಿದನು ವಿದುರ ೩೮

ಬಡಗಲುತ್ತರ ಕುರು ನರೇಂದ್ರರ
ನಡುಗಿಸಿದರುದಯಾದ್ರಿ ತನಕವೆ
ನಡೆದು ಮುರಿದರು ಮೂಡಣರಸುಗಳತುಳ ಭುಜಬಲರ
ಪಡುವಲಗಣಿತ ಯವನ ತೆಂಕಲು
ಗಡೆ ವಿಭೀಷಣನೀ ಮಹೀಶರ
ಬಡಿದ ಪಾಂಡವರರಸಿ ತೊತ್ತಹಳೇ ಶಿವಾಯೆಂದ ೩೯

ತಿರುವ ಕೊರಳಲಿ ತೊಡಿಸಲಾರದೆ
ತೆರಳಿದರು ಚತುರಂಗ ಪೃಥ್ವೀ
ಶ್ವರರು ಮಾಗಧ ಚೈದ್ಯ ಮೊದಲಾದತುಲ ಭುಜಬಲರು
ತಿರುವನೇರಿಸಿ ಧನುವನುಗಿದ
ಬ್ಬರಿಸಿ ಗಗನದ ಯಂತ್ರಮತ್ಸ್ಯವ
ಮುರಿದ ಪಾಂಡವರರಸಿ ತೊತ್ತಹಳೇ ಶಿವಾಯೆಂದ ೪೦

ಬಕನ ಮುರಿದರು ವನದಲಿ ಹಿಡಿಂ
ಬಕನ ಹಣಿದರು ಮಾಗಧನ ಸು
ಪ್ರಕಟ ಬಲನಂಬುಜದ ನಾಳವನಾನೆ ಕೀಳ್ವಂತೆ
ಸಕಲಜನ ನೃಪರರಿಯೆ ಸೀಳಿದ
ರಕಟ ಮಾರಿಯ ಬೇಟವೇ ಪಾ
ತಕವಲಾ ಪಾಂಚಾಲೆ ತೊತ್ತಹಳೆ ಶಿವಾಯೆಂದ ೪೧

ಸೋಲಿಸಿದೆ ನೀನೀಗಲೀ ನರ
ಪಾಲರನು ಜೂಜಿನಲಿ ವೋಲಣ
ಕಾಳಗದ ಕಳನೊಳಗೆ ಕವಿತಹ ಕೋಲ ತೋಹಿನಲಿ
ಸೋಲವೊಂದಕೆ ನೂರು ನೂರರ
ಮೇಲೆ ಸಾವಿರ ಸಾವಿರದ ಮೈ
ಸಾಲ ಲಕ್ಷವನಂತವಾಗಿಯೆ ತೆಗೆವರವರೆಂದ ೪೨

ಎಳೆದು ತರಿಸಾ ದ್ರೌಪದಿಯ ನೀ
ಕಳಕಳಕೆ ಕೈಗೊಟ್ಟವೋಲ
ಸ್ಖಲಿತರಿಹರಕ್ಷಮತೆಯಲಿ ತತ್ಸಮಯ ಪರಿಯಂತ
ಬಳಿಕ ನೂರ್ವರ ಸತಿಯರಕ್ಕೆಯ
ಕಳವಳದ ಬಿಡುಮುಡಿಯ ಬಸುರಿನ
ತಳದ ಬಿರುಪೊಯ್ಲುಗಳ ಭಂಗವ ಕಾಂಬರಿವರೆಂದ ೪೩

ಇವನವರ ಬಹಿರಂಗ ಜೀವ
ವ್ಯವಹರಣೆಯಾತನು ವೃಥಾ ತಾ
ನಿವನ ಕೆಣಕಿದೆನಕಟ ಬೋಧಭ್ರಾಂತಿ ಬಾಹಿರನ
ಇವನಿರಲಿ ಬಾ ಪ್ರಾತಿಕಾಮಿಕ
ಯುವತಿಯನು ಕರೆ ಹೋಗು ನೀನೆನ
ಲವ ಹಸಾದವ ಹಾಯ್ಕಿ ಬಂದನು ದೇವಿಯರಮನೆಗೆ ೪೪

ಬಂದು ಬಾಗಿಲ ಕಾಹಿಗಳ ಕರೆ
ದೆಂದನರಸಿಗೆ ಬಿನ್ನವಿಸಿ ತಾ
ಬಂದ ಹದನನು ಕಾರ್ಯವುಂಟೆನೆ ಹಲವು ಬಾಗಿಲಲಿ
ಬಂದುದಲ್ಲಿಯದಲ್ಲಿಗರುಹಿಸ
ಲಿಂದುಮುಖಿ ಕೇಳಿದಳು ಬರ ಹೇ
ಳೆಂದರಾತನ ಹೊಗಿಸಿದರು ಹೊಕ್ಕನು ಸತೀಸಭೆಯ ೪೫

ಹೊಳೆವ ಕಂಗಳ ಕಾಂತಿಗಳ ಥಳ
ಥಳಿಪ ವದನಪ್ರಭೆಯ ರತ್ನಾ
ವಳಿಯ ಬಹುವಿಧ ರಶ್ಮಿಗಳ ಲಾವಣ್ಯ ಲಹರಿಗಳ
ಎಳೆನಗೆಯ ಸುಲಿಪಲ್ಲ ಮುಕ್ತಾ
ವಳಿಯ ನಖ ದೀಧಿತಿಯ ಬೆಳಗಿನ
ಬಳಗವೆನೆ ಬಾಲಕಿಯರಿದ್ದರು ಸತಿಯ ಬಳಸಿನಲಿ ೪೬

ಗಿಳಿಯ ಮೆಲು ನುಡಿಗಳ ವಿನೋದದಿ
ಕೆಲರು ವೀಣಾಧ್ವನಿಯ ರಹಿಯಲಿ
ಕೆಲರು ಸರಸ ಸುಗಂಧ ಸಂಗೀತದ ಸಮಾಧಿಯಲಿ
ಕೆಲರು ನೇತ್ರದಲಮಳ ಮುಕ್ತಾ
ವಳಿಯ ಚೆಲುವಿನ ಚದುರೆಯರು ಕಂ
ಗೊಳಿಸಿತಬಲೆಯ ಮಣಿಯ ಮಂಚದ ಸುತ್ತುವಳೆಯದಲಿ ೪೭

ಸಕಲ ಶಕ್ತಿಪರೀತ ವಿಮಳಾಂ
ಬಿಕೆಯವೋಲ್ ವರಮಂತ್ರ ದೇವೀ
ನಿಕರ ಮಧ್ಯದಿ ಶೋಭಿಸುವ ಸಾವಿತ್ರಿಯಂದದಲಿ
ವಿಕಟ ರಶ್ಮಿ ನಿಬದ್ಧ ರತ್ನ
ಪ್ರಕರ ಮಧ್ಯದ ಕೌಸ್ತುಭದವೋಲ್
ಚಕಿತ ಬಾಲಮೃಗಾಕ್ಷಿ ಮೆರೆದಳು ಯುವತಿ ಮಧ್ಯದಲಿ ೪೮

ಸುತ್ತಲೆಸೆಯೆ ವಿಳಾಸಿನೀಜನ
ಹತ್ತು ಸಾವಿರ ನಡುವೆ ಕಂಡನು
ಮತ್ತ ಕಾಶಿನಿಯನು ಪತಿವ್ರತೆಯರ ಶಿರೋಮಣಿಯ
ಹತ್ತಿರೈತರಲಂಜಿದನು ತ
ನ್ನುತ್ತಮಾಂಗಕೆ ಕರಯುಗವ ಚಾ
ಚುತ್ತ ಬಿನ್ನಹ ಮಾಡಿದನು ಪಾಂಚಾಲ ನಂದನೆಗೆ ೪೯

ತಾಯೆ ಬಿನ್ನಹವಿಂದು ನಿಮ್ಮಯ
ರಾಯ ಸೋತನು ಜೂಜಿನಲಿ ಕುರು
ರಾಯ ಗೆಲಿದನು ಕೋಶವನು ಗಜತುರಗ ರಥಸಹಿತ
ನೋಯಲಾಗದು ಹಲವು ಮಾತೇ
ನಾ ಯುಧಿಷ್ಠಿರ ನೃಪತಿ ಸೋತನು
ತಾಯೆ ಭೀಮಾರ್ಜುನ ನಕುಲ ಸಹದೇವ ನೀವ್ಸಹಿತ ೫೦

ಅರಳಿದಂಬುಜ ವನಕೆ ಮಂಜಿನ
ಸರಿಯು ಸುರಿವಂದದಲಿ ಸುಗ್ಗಿಯ
ಸಿರಿಯ ಹೊಸ ಬೆಳುದಿಂಗಳನು ಬಲುಮುಗಿಲು ಕವಿವಂತೆ
ಚರನ ಬಿನ್ನಹಕರಸಿ ಮೊದಲಾ
ಗಿರೆ ಸಮಸ್ತ ಸಖೀಜನದ ಮುಖ
ಸರಸಿರುಹ ಬಾಡಿದವು ಮುಸುಕಿತು ಮೌನಮಯಜಲಧಿ ೫೧

ದೂತ ಹೇಳೈ ತಂದೆ ಜೂಜನ
ಜಾತರಿಪುವಾಡಿದನೆ ಸೋತನೆ
ಕೈತವದ ಬಲೆಗಾರರವದಿರು ಶಕುನಿ ಕೌರವರು
ದ್ಯೂತದಲಿ ಮುನ್ನೇನನೊಡ್ಡಿದ
ಸೋತನೇನನು ಶಿವ ಶಿವಾ ನಿ
ರ್ಧೂತಕಿಲ್ಬಿಷನರಸನೆಂದಳು ದ್ರೌಪದಾದೇವಿ ೫೨

ತಾಗಿದುದಲಾ ನಾರದಾದ್ಯರ
ನಾಗತವನರುಹಿದರು ಹಿಂದೆ ವಿ
ಯೋಗವಾಯಿತೆ ಲಕ್ಷ್ಮಿಗಿಂದ್ರ ಪ್ರಸ್ಥಪುರವರದ
ಹೋಗಲದು ಮುನ್ನೇನನೊಡ್ಡಿದ
ನೀಗಿದನು ಗಡ ತನ್ನನೆಂತಿದ
ರಾಗು ಹೋಗೇನೆಂದು ನುಡಿದಳು ಪ್ರಾತಿಕಾಮಿಕನ ೫೩

ಮೊದಲಲರ್ಥವ ಹೆಸರುಗೊಂಡೊ
ಡ್ಡಿದನು ಸೋತನು ಮರಳಿ ಮಗುಳೊ
ಡ್ಡಿದನು ಹೇರಾಳದಲಿ ಧನವನು ಕರಿಘಟಾವಳಿಯ
ಕುದುರೆ ರಥ ನಿಮ್ಮಡಿಯ ಮೇಳದ
ಸುದತಿಯರನೊಡ್ಡಿದನು ಸೋತನು
ತುದಿಯಲನುಜರನೊಡ್ಡಿ ಸೋತನು ತಾಯೆ ಕೇಳೆಂದ ೫೪

ಬಳಿಕ ತನ್ನನೆ ಸೋತನಲ್ಲಿಂ
ಬಳಿಕ ನಿಮ್ಮಡಿಗಳಿಗೆ ಬಂದುದು
ಖಳರು ಶಕುನಿ ಸುಯೋಧನರು ನೀವಾಗಳೆಂದಿರಲೆ
ಅಳುಕಬೇಡಿನ್ನೇನು ಭೂಪತಿ
ತಿಲಕ ತನ್ನನು ಮುನ್ನ ಸೋಲಿದು
ಬಳಿಕ ತನ್ನನು ಸೋತನೇ ಹೇಳೆಂದಳಿಂದುಮುಖಿ ೫೫

ಅಹುದು ತನ್ನನು ಮುನ್ನ ಸೋತನು
ಮಹಿಳೆಗೊಡ್ಡಿದೆನೆಂದು ನಿಮ್ಮನು
ಮಹಿಪ ಸೋತನು ತಾಯೆ ಬಿಜಯಂಗೈಯ್ಯಬೇಹುದೆನೆ
ವಿಹಿತವಿದು ಮಾನುಷವೆ ದೈವದ
ಕುಹಕವೈಸಲೆ ಮಗನೆ ತಾನೇ
ಬಹೆನು ನೀ ಹೋಗೊಮ್ಮೆ ಹೇಳೀ ಮಾತನಾ ಸಭೆಗೆ ೫೬

ಮುನ್ನ ತನ್ನನು ಸೋತ ಬಳಿಕಿನೊ
ಳೆನ್ನ ಸೋತರೆ ಸಲುವುದೇ ಸಂ
ಪನ್ನ ವಿಮಲಜ್ಞಾನರರಿದೀ ಪ್ರಶ್ನೆಗುತ್ತರವ
ಎನ್ನ ಮೆಚ್ಚಿಸಿಕೊಡಲಿ ತಾ ಬಹೆ
ನೆನ್ನು ಹೋಗೆನಲವನು ಭಯದಲಿ
ತನ್ನೊಳಗೆ ನಡುಗುತ್ತ ಬಂದನು ಕೌರವನ ಸಭೆಗೆ ೫೭

ಜೀಯ ದೇವಿಯರೆಂದ ಮಾತಿದು
ರಾಯ ಮುನ್ನವೆ ತನ್ನ ಸೋತಬು
ಜಾಯತಾಕ್ಷಿಯ ಬಳಿಕ ಸೋತರೆ ಧರ್ಮಸೂಕ್ಷ್ಮದಲಿ
ರಾಯಸಭೆಯಲಿ ಹಿರಿಯರರಿದದ
ರಾಯತವನರುಹಿದರೆ ಬಹೆನೆಂ
ದಾ ಯುವತಿ ಬಿನ್ನಹ ಮಾಡಿದಳೆಂದು ಕೈಮುಗಿದ ೫೮

ರಾಯ ಸೋತನು ತನ್ನ ನಾವ
ನ್ಯಾಯದಲಿ ತಹುದಿಲ್ಲ ತೊತ್ತಿರ
ಲಾಯದಲಿ ಕೂಡುವೆವು ಕರೆಯೆನಲಿವನು ಗರ ಹೊಡೆದು
ವಾಯುಸುತನಂಜಿಸುವನೆಂದೀ
ನಾಯಿ ಬೆದರಿದನಕಟ ದೂತನ
ಬಾಯ ನೋಡಾಯೆನುತ ಮಿಗೆ ಗರ್ಜಿಸಿದ ಕುರುರಾಯ ೫೯

ತಮ್ಮ ಬಾರೈ ಹೋಗು ದಿಟ ನೀ
ನಮ್ಮವರೆ ಹಿಡಿದೆಳೆದು ತಾ ನೃಪ
ರೆಮ್ಮ ಕಿಂಕರರೈವರಿದ್ದೇನ ಮಾಡುವರು
ತಮ್ಮ ಕರ್ಮವಿಪಾಕ ಗತಿ ನೆರೆ
ತಮ್ಮನೇ ಕೆಡಿಸುವುದು ಧರ್ಮ ವಿ
ದೆಮ್ಮ ಕಾರಣವಲ್ಲ ನೀ ಹೋಗೆಂದನಾ ಭೂಪ ೬೦

ಗಾಳಿಯಳೆಯನಿರಿಯಲಗ್ನಿ
ಜ್ವಾಲೆಯಲಿ ತಟ್ಟಿಯುವೆ ಕಡುಹಿನ
ಕಾಳಕೂಟದ ನದಿಗೆ ನಂಜಿನ ಹೊನಲು ಬೆರೆಸಿದರೆ
ವಾಳಿಯುವೆ ದುಶ್ಶಾಸನನು ಜಗ
ದೂಳಿಗದ ದುರುದುಂಬಿ ಕುರುಪತಿ
ಮೇಲೆ ನೇಮಿಸಲುಚಿತಗೈವನೆ ಭೂಪ ಕೇಳೆಂದ ೬೧

ಹರಿದನವ ಬೀದಿಯಲಿ ಬಿಡುಂದಲೆ
ವೆರೆಸಿ ಸತಿಯರಮನೆಯ ಬಾಗಿಲ
ಚರರು ತಡೆದರೆ ಮೆಟ್ಟಿದನು ತಿವಿದನು ಕಠಾರಿಯಲಿ
ತರುಣಿಯರು ಕಂಡಂಜಿ ಹೊಕ್ಕರು
ಸರಸಿಜಾಕ್ಷಿಯ ಮರೆಯನೀ ಖಳ
ನುರವಣಿಸಿದನು ರಾಹು ತಾರಾಧಿಪನ ತಗುಳ್ವಂತೆ ೬೨

ಬಂದನಿವನಬುಜಾಕ್ಷಿಯಿದಿರಲಿ
ನಿಂದನೆಲೆಗೇ ಗರುವತನವಿದು
ಹಿಂದೆ ಸಲುವುದು ಸಲ್ಲದಿದು ಕುರುರಾಜ ಭವನದಲಿ
ಇಂದು ಮರೆ ನಡೆ ನಮ್ಮ ತೊತ್ತಿರ
ಮುಂದೆ ಮೆರೆ ನಡೆ ಮಂಚದಿಂದಿಳಿ
ಯೆಂದು ಜರೆದನು ಕೌರವಾನುಜನಾ ಮಹಾಸತಿಯ ೬೩

ಜನಪನನುಜನು ನೀನೆನಗೆ ಮೈ
ದುನನಲೇ ತಪ್ಪೇನು ಯಮ ನಂ
ದನನು ಸೋಲಲಿ ನನ್ನ ಪ್ರಶ್ನೆಗೆ ಕೊಡಲಿ ಮರುಮಾತ
ಅನುಜ ಕೇಳೈ ಪುಷ್ಪವತಿ ತಾ
ನೆನಗೆ ರಾಜಸಭಾ ಪ್ರವೇಶವ
ದನುಚಿತವಲೇ ಹೇಳೆನಲು ಖಳರಾಯ ಖತಿಗೊಂಡ ೬೪

ಎಲ್ಲಿಯದು ದುಷ್ಪ್ರಶ್ನೆ ಮರು ಮಾ
ತೆಲ್ಲಿಯದು ನೀ ಪುಷ್ಪವತಿಯಾ
ಗಲ್ಲಿ ಫಲವತಿಯಾಗು ನಡೆ ಕುರುರಾಯ ಭವನದಲಿ
ಖುಲ್ಲರೈವರು ತಮ್ಮ ಸೋತರು
ಬಲ್ಲವಿಕೆಯುಚಿತವನು ಮೌಳಿಯ
ನಲ್ಲಿ ತೋರಾಯೆನುತ ತಪ್ಪಿದನಹಹ ಸಿರಿಮುಡಿಗೆ ೬೫

ಆ ಮಹೀಶಕ್ರತುವರದೊಳು
ದ್ದಾಮ ಮುನಿಜನರಚಿತ ಮಂತ್ರ
ಸ್ತೋಮ ಪುಷ್ಕಲ ಪೂತ ಪುಣ್ಯಜಲಾಭಿಷೇಚನದ
ಶ್ರೀಮುಡಿಗೆ ಕೈಯಿಕ್ಕಿದನು ವರ
ಕಾಮಿನೀ ನಿಕುರುಂಬವಕಟಕ
ಟಾ ಮಹಾಸತಿ ಶಿವ ಶಿವಾಯೆಂದೊದರಿತಲ್ಲಲ್ಲಿ ೬೬

ಕೆದರಿದವು ಸೂಸಕದ ಮುತ್ತುಗ
ಳುದುರಿದವು ಸೀಮಂತ ಮಣಿಗಳ
ಹೊದರು ಮುರಿದವು ಕರ್ಣಪೂರದ ರತ್ನದೋಲೆಗಳು
ಸುದತಿಯರು ಗೋಳಿಡುತ ಬರೆ ಮೆ
ಟ್ಟಿದನು ತಿವಿದನು ಕಾಲಲಡಬಿ
ದ್ದುದು ಸಖೀಜನವೆಳೆದು ಝಾಡಿಸಿ ಜರೆದು ಝೋಂಪಿಸಿದ ೬೭

ಮಣಿದ ತನುವಿನ ವೇಗಗತಿಯಲಿ
ಝಣಝಣಿಪ ನೂಪುರದ ರವ ಕಂ
ಕಣದ ದನಿ ಕೇವಣದ ಹೊಂಗಿರುಗೆಜ್ಜೆಗಳ ರಭಸ
ಗಣಿಕೆಯರ ಕೆಳದಿಯರ ಹಾಹಾ
ರಣಿತಕಿವು ನೆರವಾದವಾ ಪ
ಟ್ಟಣವ ತುಂಬಿತು ಶೋಕವದನೇನೆಂಬೆನದ್ಭುತವ ೬೮

ಹಡಪಗಿತಿಯರು ಸೀಗುರಿಯ ಕ
ನ್ನಡಿಯವರು ಮೇಳದ ವಿನೋದದ
ನುಡಿನಗೆಯ ಸಖಿಯರು ಪಸಾಯ್ತೆಯರಾಪ್ತ ದಾಸಿಯರು
ಒಡನೆ ಬಂದರು ಕಂಬನಿಯ ಬಿಡು
ಮುಡಿಯ ಹಾಹಾರವದ ರಭಸದ
ನಡೆಯಲಖಿಳ ವಿಲಾಸಿನಿಯರು ಸಹಸ್ರ ಸಂಖ್ಯೆಯಲಿ ೬೯

ನಗೆವೊಗವನೊಮ್ಮೆಯು ಪಯೋಧರ
ಯುಗಳ ನೋಡುವ ಸಖ್ಯದಲಿ ದೃಗು
ಯುಗಳ ಜಲಬಿಂದುಗಳಿಗಾ ಜಲಬಿಂದು ಸುರಿವಂತೆ
ಒಗುವ ಖಂಡಿತ ಹಾರ ಮಂಕ್ತಾ
ಳಿಗಳು ಮೆರೆದವು ಮಾನಿನಿಯರು
ಬ್ಬೆಗದ ರೋದನ ರೌರವದೊಳೈತಂದಳಿಂದುಮುಖಿ ೭೦

ಬೆದರುಗಂಗಳ ಬಿಟ್ಟ ಮಂಡೆಯ
ಹುದಿದ ಹಾಹಾರವದ ತೊಡಕಿದ
ಪದಯುಗದ ಮೇಲುದಿನ ಬೀದಿಯ ಧೂಳಿ ಧೂಸರದ
ವದನಕಮಲದ ಖಳನ ವಾಮಾಂ
ಗದಲಿ ಬಾಗಿದ ತನುಲತೆಯ ವರ
ಸುದತಿ ಬಂದಳು ರಾಜಸಭೆಗೆ ನೃಪಾಲ ಕೇಳೆಂದ ೭೧

ಅಹಹ ಪಾಂಡವ ರಾಯ ಪಟ್ಟದ
ಮಹಿಳೆಗೀ ವಿಧಿಯೇ ಮಹಾಕ್ರತು
ವಿಹಿತ ಮಂತ್ರ ಜಲಾಭಿಷಿಕ್ತ ಕಚಾಗ್ರಕಿದು ವಿಧಿಯೆ
ಮಿಹಿರ ಬಿಂಬವ ಕಾಣದೀ ನೃಪ
ಮಹಿಳೆಗಿದು ವಿಧಿಯೇ ವಿಧಾತನ
ಕುಹಕವೈಸಲೆ ಶಿವ ಶಿವಾಯೆಂದರು ಸಭಾಜನರು ೭೨

ತುಳುಕಿದವು ಕಂಬನಿಗಳಾ ಸಭೆ
ಯೊಳಗೆ ದುಶ್ಶಾಸನ ಸುಯೋಧನ
ಖಳ ಶಿರೋಮಣಿ ಶಕುನಿ ಕರ್ಣ ಜಯದ್ರಥಾದ್ಯರಿಗೆ
ತಳಿತುದದ್ಭುತಹರ್ಷ ಮುಖ ಮಂ
ಡಲಕೆ ಸೀರೆಯನವುಚೆ ನಯನೋ
ದ್ಗಳಿತ ಜಲಧಾರೆಯಲಿ ನೆನೆದುದು ಸಭೆ ವಿಷಾದದಲಿ ೭೩

ವ್ಯಾಕುಲವನಿದ ಕಾಂಬ ಕಣ್ಣುಗ
ಳೇಕೆ ರಾಜ ಕುಮಾರಿಯೀಕೆಯ
ಶೋಕ ರಸವನು ಕುಡಿವ ಕರ್ಣದ್ವಯವಿದೇಕೆಮಗೆ
ಏಕೆ ವಿಧಿ ನಿರ್ಮಿಸಿದನೋ ನಾ
ವೇಕೆ ಸಪ್ರಾಣರೊ ಶಿವಾಯೆಂ
ದಾ ಕುಠಾರರ ಬೈದುದಾ ಸಭೆಯಲಿ ಬುಧವ್ರಾತ ೭೪

ವನಜಮುಖಿಯಕ್ಕೆಯನು ದುಶ್ಶಾ
ಸನನ ದುರ್ನೀತಿಯನು ದುರ್ಯೋ
ಧನನ ದುಶ್ಚೇಷ್ಟೆಯನು ಕಂಡೀ ಭೀಮ ಫಲುಗುಣರು
ಮನದೊಳಗೆ ಕೌರವನ ಕರುಳನು
ತನಿ ರಕುತದಲಿ ಕುದಿಸಿದರು ವಾ
ಜನಿಕ ಕರ್ಮಕ್ರಿಯೆಗೆ ನೆನೆವುದನರಿದನಾ ಭೂಪ ೭೫

ಹುಬ್ಬಿನಲಿ ನಿಲಿಸಿದನು ಪವನಜ
ನುಬ್ಬಟೆಯನರ್ಜುನನ ವಿಕೃತಿಯ
ನಿಬ್ಬರಾಲಾಪವನು ಧರ್ಮರಹಸ್ಯ ನಿಷ್ಠೆಯಲಿ
ಹಬ್ಬಿದುದು ಭೀಷ್ಮಂಗೆ ಶೋಕದ
ಮಬ್ಬು ಗುರು ಗೌತಮರು ವಿದುರನು
ಸರ್ಬ ಖೇದಾಂಬುಧಿಯೊಳದ್ದರು ಭೂಪ ಕೇಳೆಂದ ೭೬

ಅರಸ ಕೇಳೈ ಬಳಿಕ ಹಸ್ತಿನ
ಪುರದೊಳಾಯಿತ್ತು ವಾರ್ತೆ ಬಳಿಕೀ
ಪುರದ ಬಹಿರೋದ್ಯಾನ ವೀಧಿಗಳೊಳಗೆ ಹರಹಿನಲಿ
ಅರಸಿಯರು ಸೌಭದ್ರನವರೈ
ವರ ಕುಮಾರರು ಮಂತ್ರಿಗಳು ಮು
ಖ್ಯರು ಪಸಾಯ್ತರು ಕೇಳಿದರು ಪಾಂಡವ ಪರಾಜಯವ ೭೭

ಬಂದರಿದಿರೊಳು ಕೌರವರ ಕಡೆ
ನಂದನರ ಕಡೆ ಯಾವುದೆನೆ ಸಾ
ವಂದದಲಿ ಹೊಯ್ದಾಡಿ ಹಿಡಿವೆವು ಸುರರ ಸೂಳೆಯರ
ಎಂದು ತಮ್ಮೊಳು ನೆರೆದು ಸೇನಾ
ವೃಂದ ಸಜ್ಜೋಡಿನಲಿ ಕಾಳಗ
ಕಂದು ಮೋಹರಿಸಿದರು ಹಸ್ತಿನಪುರದ ಬಾಹೆಯಲಿ ೭೮

ಇತ್ತಲಬಲೆಯ ವಿಧಿಯ ಕೇಳತಿ
ಮತ್ತನೈ ಧೃತರಾಷ್ಟ್ರ ಸುತನೀ
ಮತ್ತ ಗಜಗಾಮಿನಿಯ ಬಿಡಿಸಿದನವನ ಕೈಯಿಂದ
ನೆತ್ತ ಸೋತುದು ನಿನ್ನನೊಡ್ಡಿ ನೃ
ಪೋತ್ತಮನು ಸಲೆ ಮಾರ ಮಾರಿದ
ನತ್ತಡೇನಹುದೆಲೆಗೆ ತೊತ್ತಿರ ಹಿಂಡ ಹೊಗುಯೆಂದ ೭೯

ಲಲಿತ ಬುದ್ಧಿಗಳೀಗ ನೋಡಿರಿ
ಲಲನೆಯನು ಸತಿ ದಿಟ್ಟೆಯೆನ್ನದಿ
ರೆಲೆ ಸುಯೋಧನ ರಾಜಸಭೆಯಿದು ದೋಷರಹಿತವಲೆ
ಗೆಲವಿದೆಂತುಂಟೊ ತನ್ನ ಸೋಲಿದು
ಬಳಿಕ ಸೋತರೆ ಧರ್ಮಗತಿಯನು
ತಿಳಿದು ಹೇಳಲಿ ತತ್ವಭಾಸದರೆಂದಳಿಂದುಮುಖಿ ೮೦

ಹಿರಿಯರಿಲ್ಲದ ಸಭೆ ಮನುಷ್ಯರ
ನೆರವಿಯದು ಸಭೆಯಲ್ಲ ಮೂರ್ಖರು
ಹಿರಿಯರಲ್ಲ ಯಥಾರ್ಥ ಭಾಷಣ ಭೀತಚೇತನರು
ಹಿರಿಯರಿದೆ ಸಾಮಾಜಿಕರು ಸ
ಚ್ಚರಿತರಿದೆಲಾ ಸ್ತ್ರೀಮತವನು
ತ್ತರಿಸಲಾಗದೆ ಧರ್ಮಶಾಸ್ತ್ರದೊಳೆಂದಳಿಂದುಮುಖಿ ೮೧

ಚಪಳೆ ಫಡ ಹೋಗಿವಳು ಹಲಬರ
ನುಪಚರಿಸುವುದನರಿಯಲಾದುದು
ದ್ರುಪದನಂದನೆ ನಡೆ ವಿಳಾಸಿನಿಯರ ವಿಧಾನದಲಿ
ಕೃಪಣನೇ ಕುರುರಾಯ ನಿನಗಿ
ನ್ನಪದೆಸೆಯ ಹೊಲೆ ಹೋಯ್ತು ರಾಯನ
ವಿಪುಳ ವಿಭವವನನುಭವಿಸು ನಡೆಯೆಂದನಾ ಕರ್ಣ ೮೨

ಅಹುದೆಲೇ ಬಳಿಕೇನು ದಾಸ್ಯಕೆ
ವಿಹಿತವಾಯಿತು ನಿನ್ನ ತನುವಿನ
ಲಹ ಮನೋವ್ಯಥೆಯೇಕೆ ರಾಣೀವಾಸವೀಥಿಯಲಿ
ಮಹಿಳೆಯರ ಸಖ್ಯದಲಿ ಸೌಖ್ಯದ
ರಹಣಿಗೊಡಬಡು ವಾರಕದಲತಿ
ಬಹಳ ಭೂಷಣ ಭಾರದಲಿ ಮೆರೆಯೆಂದನಾ ಶಕುನಿ ೮೩

ವಾರಕದ ವಿವಿಧಾಭರಣ ಶೃಂ
ಗಾರವಂತಿರಲೀಕೆಯಾಡಿದ
ಸಾರ ಭಾಷೆಗೆ ನೆನೆಯರೇ ನಿರ್ವಾಹ ಸಂಗತಿಯ
ಓರೆಪೋರೆಯೊಳಾಡಿ ಧರ್ಮದ
ಧಾರಣೆಯ ಧಟ್ಟಿಸುವದಿದು ಗಂ
ಭೀರರಿಗೆ ಗರುವಾಯಿಯೇ ಸುಡಲೆಂದನಾ ಭೀಷ್ಮ ೮೪

ತುಟ್ಟಿಸಲಿ ಧನ ಮಾನಗರ್ವದ
ಬೆಟ್ಟ ಮುರಿಯಲಿ ಜೀವವೊಡಲನು
ಬಿಟ್ಟು ಹಿಂಗಲಿ ಬಿಡೆನು ಸತ್ಯವನೆಂದು ಯಮಸೂನು
ನೆಟ್ಟನೇ ನಿಶ್ಚೈಸಿದುದನೊಡ
ಹುಟ್ಟಿದರು ಮನ್ನಿಸಿದರಲ್ಲದೆ
ಹುಟ್ಟಿ ಹೊಂದಲು ಗತಿಯಹುದೆ ನಿನಗೆಂದನಾ ಭೀಷ್ಮ ೮೫

ಅಳಿಯದಂತಿರೆ ಸತ್ಯಧರ್ಮದ
ನೆಳಲು ನೆಗ್ಗದೆ ಕೀರ್ತಿವಧುವಿನ
ಸುಳಿವು ನೋಯದೆ ತಳಿರು ಬಾಡದೆ ಧೈರ್ಯ ಸುರಕುಜದ
ಹಳಿವಿಗಳುಕದೆ ವೈರಿವರ್ಗದ
ಕಳಕಳಕೆ ಮೈಗೊಡದೆ ನೃಪ ನಿ
ರ್ಮಳದಲಿದ್ದರೆ ನಿನಗೆ ಸದರವೆಯೆಂದನಾ ಭೀಷ್ಮ ೮೬

ಸೋತಬಳಿಕಿವರೆಮ್ಮ ವಶವ
ಖ್ಯಾತಿಯಲಿ ನಾವ್ ನಡೆವರಲ್ಲ ವ್ಯ
ಥಾತಿರೇಕದಿ ನೀವು ಘೂರ್ಮಿಸಲಂಜುವೆನೆ ನಿಮಗೆ
ಈ ತಳೋದರಿ ತೊತ್ತಿರಲಿ ಸಂ
ಘಾತವಾಗಲಿ ಸಾಕು ನಿಮ್ಮಯ
ಮಾತೆನುತ ಕುರುರಾಯ ಜರೆದನು ಭೀಷ್ಮ ಗುರು ಕೃಪರ ೮೭

ನೊಂದನೀ ಮಾತಿನಲಿ ಮಾರುತ
ನಂದನನು ಸಹದೇವನನು ಕರೆ
ದೆಂದನಗ್ನಿಯ ತಾ ಯುಧಿಷ್ಠಿರನೃಪನ ತೋಳುಗಳ
ಮಂದಿ ನೋಡಲು ಸುಡುವೆನೇಳೇ
ಳೆಂದು ಜರೆದರೆ ಹಿಡಿದು ಮಾದ್ರೀ
ನಂದನನ ನಿಲಿಸಿದನು ಫಲುಗುಣ ನುಡಿದನನಿಲಜನ ೮೮

ಏನಿದೇನೈ ಭೀಮ ನಿಲು ಯಮ
ಸೂನು ಶಿವ ಶಿವ ಗುರುವಲಾ ನಮ
ಗೀ ನಿತಂಬಿನಿಯಾದಿಯಾದ ಸಮಸ್ತ ವಸ್ತುಗಳು
ಈ ನರೇಂದ್ರಗೆ ಸರಿಯೆ ಕುಂತೀ
ಸೂನುವೇ ಪ್ರಾಣಾರ್ಥದಿಂದ ಸ
ಘಾನನೈ ನಮಗೀತನೇ ಗತಿಯೆಂದನಾ ಪಾರ್ಥ ೮೯

ಹಿಂಗಿ ಹೋಗಲಿ ತನುವನಸು ಸ
ಪ್ತಾಂಗ ಬೇಯಲಿ ಖೋಡಿ ಮನದಲಿ
ಹಿಂಗುವದೆ ಹರಹರ ಧನಂಜಯ ಕಾಕ ಬಳಸಿದೆಲ
ಅಂಗನೆಯ ಮೇಲೊಡ್ಡವೇ ಲಲಿ
ತಾಂಗಿಗೀ ವಿಧಿಯೇಕೆ ನವಗೀ
ಭಂಗ ಸಾಲದೆ ಸುಡುವೆನಾದೊಡೆ ತನ್ನ ತೋಳುಗಳ ೯೦

ಈಯವಸ್ಥೆಗೆ ತಂದ ಕೌರವ
ನಾಯಿಗಳ ನಿಟ್ಟೆಲುವ ಮುರಿದು ನ
ವಾಯಿಯಲಿ ಘಟ್ಟಿಸದೆ ಕೊಬ್ಬಿದ ತನ್ನ ತೋಳುಗಳ
ವಾಯುಸಖನಲಿ ಸುಡುವೆನೀಗಳೆ
ಬೀಯವಾಗಲಿ ದೇಹವಾಚಂ
ದ್ರಾಯತವೆ ಎಂದೊಡನೊಡನೆ ಮಿಡುಕಿದನು ಕಲಿಭೀಮ ೯೧

ಅಕಟ ಧರ್ಮಜ ಭೀಮ ಫಲುಗುಣ
ನಕುಲ ಸಹದೇವಾದ್ಯರಿರ ಬಾ
ಲಕಿಯನೊಪ್ಪಿಸಿ ಕೊಟ್ಟಿರೇ ಮೃತ್ಯುವಿನ ತಾಳಿಗೆಗೆ
ವಿಕಳರಾದಿರೆ ನಿಲ್ಲಿ ನೀವೀ
ಗಕುಟಿಲರಲಾ ಭೀಷ್ಮ ಗುರು ಬಾ
ಹ್ಲಿಕ ಕೃಪಾದಿಗಳುತ್ತರವ ಕೊಡಿಯೆಂದಳಬುಜಾಕ್ಷಿ ೯೨

ಕಂಗಳಿಂದನುಯೋಗ ನಿಜ ಹ
ಸ್ತಾಂಗುಲಿಯೊಳುತ್ತರ ಲಸದ್ಭ್ರೂ
ಭಂಗದಲಿ ಸಂದೇಹ ಮುಖ ವಿಕೃತಿಯಲಿ ದುರ್ನೀತಿ
ಇಂಗಿತದಲಾಂಗಿಕದ ಭಾವಾ
ಭಂಗ ಪರಿಯನು ಯೋಗಯುಕ್ತ ನ
ಯಂಗಳಲಿ ತಿಳಿದುಸುರದಿರ್ದುದು ಸಭೆ ಸುಭೀತಿಯಲಿ ೯೩

ಅರಿದು ಮೌನವೊ ಮೇಣು ಮಾನಿನಿ
ಯೊರಲುತಿರಲೆಂದಾದುಪೇಕ್ಷೆಯೊ
ಮುರಿದು ನುಡಿವುದಸಾಧ್ಯವೋ ಮೇಣಾವುದಿದರೊಳಗೆ
ಅರಿಯಿರೇ ಸಮವರ್ತಿ ದೂತನ
ಮುರುಕವನು ನೀವೇಕೆ ನಿಮ್ಮನು
ಮರೆದಿರೆಂದು ವಿಕರ್ಣ ಜರೆದನು ತತ್ಸಭಾಸದರ ೯೪

ಹುಸಿವಚನ ಪೌರುಷ್ಯ ಲಲನಾ
ವಿಷಯ ಮೃಗತೃಷ್ಣಾ ಪಿಪಾಸಾ
ವ್ಯಸನಿ ಬಲ್ಲನೆ ಧರ್ಮತತ್ವರಹಸ್ಯನಿಶ್ಚಯವ
ಉಸುರಲಮ್ಮರೆ ವೈದಿಕದ ತನಿ
ರಸದ ಸವಿ ನಿವಗಲ್ಲದಾರಿಗೆ
ಬಸಿದು ಬೀಳ್ವುದು ಭೀಷ್ಮಯೆಂದು ವಿಕರ್ಣ ಗರ್ಜಿಸಿದ ೯೫

ತನ್ನ ಸೋತಾಗಲೆ ಮಹೀಪತಿ
ಯನ್ಯನಾದನು ಸತಿಗೆ ತನ್ನಿಂ
ಮುನ್ನ ಸೋತರೆ ತನ್ನ ಧನವೈಸಲೆ ವಿಚಾರಿಸಲು
ಅನ್ಯನನ್ಯಳ ಸೋತ ಗಡ ತಾ
ತನ್ನ ಧನವೆಂದರಸ ಶಕುನಿಯ
ಬಿನ್ನಣಕೆ ಬೆಳ್ಳಾದನೆಂದು ವಿಕರ್ಣ ಖತಿಗೊಂಡ ೯೬

ಫಡ ವಿಕಾರವೆ ನಮ್ಮೊಡನೆ ಬಾ
ಯ್ಬಡಿಕತನವೇ ಕುರು ಮಹೀಪತಿ
ಯೊಡನೆ ಹುಟ್ಟಿದೆಯಾದ ಕಾರಣ ಬಿಟ್ಟೆವೀಸರಲಿ
ನುಡಿದರೇ ಭೀಷ್ಮಾದಿಗಳು ನೀ
ನೊಡಬಡಿಸಲೆಂತರಿವೆ ಧರ್ಮದ
ಕಡೆ ಮೊದಲ ಕೈವಾರ ನಿನಗೇಕೆಂದನಾ ಕರ್ಣ ೯೭

ಏಕಪತಿ ಬಹುಸತಿಯರೆಂಬುದು
ಲೋಕ ಪದ್ಧತಿಯಾದುದದು ತಾ
ನೇಕಸತಿ ಬಹುಪತಿಗಳಿದು ವೈದಿಕ ವಿರುದ್ಧವಲೆ
ಲೌಕಿಕವ್ಯವಹಿತದ ಕರ್ಮವ
ನೀ ಕುಮಾರ್ಗಿಗಳಲ್ಲಿ ಕಂಡೆವು
ನೀ ಕುರುವ್ರಜದೊಳಗೆ ಜನಿಸೆ ವಿಕರ್ಣ ಹೋಗೆಂದ ೯೮

ಅಹುದು ಕರ್ಣನ ನುಡಿ ವಿಕರ್ಣನು
ಬಹುವಚನ ಪಂಡಿತನು ಬಾಹಿರ
ನಹುದಲೇ ಕುರುರಾಜ ವಂಶದೊಳುದಿಸಿ ಫಲವೇನು
ಅಹಿತಹಿತ ವಿಜ್ಞಾನಿಯಲ್ಲದ
ಬೃಹದುದರ ಕಿಂಕರನ ನುಡಿ ಕಿಂ
ಗಹನವೇ ಕಲಿಕರ್ಣಯೆಂದನು ನಗುತ ಕುರುರಾಯ ೯೯

ಹಾರ ಪದಕ ಕಿರೀಟ ಮಣಿ ಕೇ
ಯೂರ ಕರ್ಣಾಭರಣವೆಂಬಿವು
ಭಾರವಲ್ಲಾ ತೆಗೆಯ ಹೇಳ್ ದಾಕ್ಷಿಣ್ಯವೇನಿದಕೆ
ನಾರಿಗೀ ವಸ್ತ್ರಾಭರಣ ಶೃಂ
ಗಾರವೇಕಿನ್ನಿವನು ತೆಗೆ ಕೈ
ವಾರವಿದಕೇಕೆಂದು ದುಶ್ಶಾಸನಗೆ ನೇಮಿಸಿದ ೧೦೦

ತೆಗೆದು ಬಿಸುಟರು ಹಾರ ಪದಕಾ
ದಿಗಳನಿವರೈವರು ದುಕೂಲವ
ನುಗಿದು ಹಾಯ್ಕಿದರಿದ್ದರಿವರೊಂದೊಂದು ವಸ್ತ್ರದಲಿ
ಹೊಗೆಮೊಗದ ಕಿಡಿಗಣ್ಣ ಕೆಮ್ಮೀ
ಸೆಗಳ ಗುಜ್ಜರಿನ ಜುಂಜು ಗೇಶದ
ವಿಗಡನೆದ್ದನು ಬಂದು ಹಿಡಿದನು ದ್ರೌಪದಿಯ ಸೆರಗ ೧೦೧

ಮುರುಹಿದರು ಮುಸುಡುಗಳ ಮಿಗೆ ನೀ
ರೊರೆವ ಕಂಗಳಲಕಟಕಟ ನಿ
ಷ್ಠುರವಿದೇಕಪಕೀರ್ತಿಯೇಕನುಚಿತವಿದೇಕೆನುತ
ಕರಗಿದರು ಕಂದಿದರು ಮಮ್ಮಲ
ಮರುಗಿದರು ಭೀಷ್ಮಾದಿಗಳು ಜ
ರ್ಝರಿತರಾದರು ತಡೆಯಲಾರದೆ ಖಳನ ದುಷ್ಕೃತವ ೧೦೨

ಅಳುಕಿದನೆ ಸುಡಲವನ ಮೇಲುದ
ಸೆಳೆದುನುನ್ನತ ಕುಚವ ನಳಿತೋ
ಳ್ಗಳಲಿ ಮುಚ್ಚಿದಳಬಲೆ ಬೆಚ್ಚಿದಳವನ ನಿಷ್ಠುರಕೆ
ಕಳವಳಿಸಿದಳು ಬೆರಲಿನಲಿ ದೃಗು
ಜಲವ ಬಿದುರುತ ನೋಡಿದಳು ನೃಪ
ತಿಲಕನನು ಭೀಮಾರ್ಜುನರ ಮಾದ್ರೀಕುಮಾರಕರ ೧೦೩

ಮುರಿದವನಿಬರ ಮೋರೆ ಮಹಿಪನ
ಕೊರಲ ಕೊಂಕಿನಲಿದ್ದರಾ ಸೋ
ದರರು ಸಾರವನಲ್ಲಿ ಕಾಣದೆ ಭೀಷ್ಮ ಗುರು ಕೃಪರ
ಮರಳಿ ನೋಡಿದಳಕಟ ಗಂಗಾ
ವರಕುಮಾರ ದ್ರೋಣ ಕೃಪರೀ
ಸೆರಗ ಬಿಡಿಸಿರೆ ತಂದೆಗಳಿರೆಂದೊರಲಿದಳು ತರಳೆ ೧೦೪

ಕ್ರೂರನಿವ ದುಶ್ಶಾಸನನು ಗಾಂ
ಧಾರಿ ಬಿಡಿಸೌ ಸೆರಗ ಸೊಸೆಯ
ಲ್ಲಾರು ಹೇಳೌ ತಂಗಿಯಲ್ಲಾ ನಿಮಗೆ ಭಾನುಮತಿ
ವೀರ ಸೈಂಧವನರಸಿ ರಾಜ ಕು
ಮಾರಿ ನೀ ನಾದಿನಿಯಲಾ ಖಳ
ರೌರವದೊಳದ್ದುವನು ಬಿಡಿಸೆಂದೊರಲಿದಳು ತರಳೆ ೧೦೫

ಎಲೆ ವಿಲಾಸಿನಿಯರಿರ ಭೂಪನ
ತಿಳಿಹಿರೌ ತಾಯ್ಗಳಿರ ನೀವಿಂ
ದೆಲೆ ಪಸಾಯ್ತೆಯರಿರ ಸಹೋದರಿಯೆಂದು ಕೌರವನ
ತಿಳುಹಿರೌ ಶರಣಾಗತರ ತಾ
ನುಳುಹಿ ಕೊಂಬುದು ಧರ್ಮವಕಟಾ
ಕಲುಹೃದಯರೌ ನೀವೆನುತ ಹಲುಬಿದಳು ತರಳಾಕ್ಷಿ ೧೦೬

ಧಾರುಣೀಪತಿಗಳಿರ ರಾಜ ಕು
ಮಾರರಿರ ಮಂತ್ರಿಗಳಿರಾ ಪರಿ
ವಾರಕಿದು ಪಂಥವೆ ವಿಚಾರಿಸಿ ನಿರಪರಾಧಿಯನು
ನಾರಿಯೊಬ್ಬಳನಕಟ ಸಭೆಯಲಿ
ಸೀರೆಯುಡಿಯುರ್ಚುವರು ಕೆಟ್ಟೆನು
ಕಾರಣಿಕರಿಲ್ಲಾ ಶಿವಾಯೆಂದೊರಲಿದಳು ತರಳೆ ೧೦೭

ಪತಿಗಳೆನ್ನನು ಮಾರಿ ಧರ್ಮ
ಸ್ಥಿತಿಯ ಕೊಂಡರು ಭೀಷ್ಮ ಮೊದಲಾ
ದತಿರಥರು ಪರಹಿತವ ಬಿಸುಟರು ವ್ಯರ್ಥಭೀತಿಯಲಿ
ಸುತನ ಸಿರಿ ಕಡುಸೊಗಸಲಾ ಭೂ
ಪತಿಗೆ ಗಾಂಧಾರಿಗೆ ಅನಾಥೆಗೆ
ಗತಿಯ ಕಾಣೆನು ಶಿವ ಶಿವಾಯೆಂದೊರಲಿದಳು ತರಳೆ ೧೦೮

ಮೈದೆಗೆದವೀ ಪ್ರಾಣವಾಯುಗ
ಳೈದು ಬಳಿಕೆನಗಾರು ಮರುಗುವ
ರೈದೆತನವೊಂದುಳಿಯಲುಳಿವುದು ವಿಂಕ್ಕ ಮಹಿಮೆಗಳು
ಬೈದು ಫಲವೇನಿನ್ನು ನಿನ್ನಯ
ಮೈದುನರ ಮರುಳಾಟಕೆನ್ನನು
ಕಾಯ್ದುಕೊಳ್ಳೈ ಕೃಷ್ಣಯೆಂದೊರಲಿದಳು ಲಲಿತಾಂಗಿ ೧೦೯

ಸುಲಿವರೂರೊಳಗುಟ್ಟ ಸೀರೆಯ
ನೆಲೆ ಮುರಾಂತಕ ರಕ್ಷಿಸೈ ಶಶಿ
ಕಳೆಗೆ ಸದರವೆ ರಾಹು ರಚಿಸಿದ ತುಟಿಯ ತೋಟಿಯದು
ಸೆಳೆವರಸುವನು ಖಳರು ಸೀರೆಯ
ಸುಲಿದರುಳಿಯೆನು ಕೃಷ್ಣ ಕರುಣಾ
ಜಲಧಿಯೇ ಕೈಗಾಯಬೇಕೆಂದೊರಲಿದಳು ತರಳೆ ೧೧೦

ಗತಿವಿಹೀನರಿಗಕಟ ನೀನೇ
ಗತಿಯಲ್ಲೆ ಗೋವಿಂದ ರಿಪು ಬಾ
ಧಿತರಿಗಬಲರಿಗಾರ್ತರಿಗೆ ನೀ ಪರಮ ಬಂಧುವಲ
ಸತಿ ಪಶು ದ್ವಿಜ ಬಾಧೆಯಲಿ ಜೀ
ವಿತವ ತೊರೆವರು ಗರುವರದು ಹಿಂ
ಗಿತೆ ಸುಯೋಧನ ಸಭೆಯೊಳೆಂದೊರಲಿದಳು ಲಲಿತಾಂಗಿ ೧೧೧

ಕಾಯಿದೈ ಕರುಣದಲಿ ದಿವಿಜರ
ತಾಯ ಪರಿಭವವನು ಪಯೋಧಿಯ
ಹಾಯಿದಮರಾರಿಗಳ ಖಂಡಿಸಿ ತಲೆಯ ಚೆಂಡಾಡಿ
ಕಾಯಿದೈ ಜಾನಕಿಯನೆನ್ನನು
ಕಾಯಬೇಹುದು ಹೆಣ್ಣ ಹರಿಬಕೆ
ನೋಯಬಲ್ಲರೆ ಕೆಲಬರೆಂದೊರಲಿದಳು ತರಳಾಕ್ಷಿ ೧೧೨

ವೇದವಧುಗಳ ಕಾಯ್ದೆಲಾ ತಮ
ಬಾಧೆಯಲಿ ಖಳನಿಂದ ಧರಣಿ ಮ
ಹೋದಧಿಯಲಕ್ಕಾಡಿದರೆ ದಾಡೆಯಲಿ ದಾನವನ
ಕೋದು ಹಾಕೀ ಭೂತ ಧಾತ್ರಿಯ
ಕಾದೆಲಾ ಕಾರುಣ್ಯಸಿಂಧುವೆ
ಮೇದಿನೀಪತಿ ಮನ್ನಿಸೆಂದೊರಲಿದಳು ತರಳಾಕ್ಷಿ ೧೧೩

ರಕ್ಷಿಸಿದೆ ಯೋಗಿಣಿಗೆ ಬೆದರುವ
ದಕ್ಷಸುತೆಯನು ಕೋಪಶಿಖಿ ತಿಮಿ
ರಾಕ್ಷನಾ ಜಮದಗ್ನಿ ಮುನಿಪನ ನುಡಿಯನನುಕರಿಸಿ
ರಕ್ಷಿಸಿದೆ ರೇಣುಕೆಯನೆನ್ನನು
ಪೇಕ್ಷಿಸದಿರೈ ಕರುಣದಲಿ ಕಮ
ಲಾಕ್ಷ ಬಿಡಿಸಾ ಸೆರಗನೆಂದೊರಲಿದಳು ಹರಿಣಾಕ್ಷಿ ೧೧೪

ದೇವಕೀದೇವಿಯರ ಸೆರೆಯನು
ದೇವ ಕೃಪೆಯಲಿ ಬಿಡಿಸಿದೈ ಕರು
ಣಾವಲಂಬದಿ ಕಳಚಿದೈ ಹದಿನಾರು ಸಾವಿರದ
ದೇವಕನ್ಯಾ ಬಂಧನವನಭಿ
ಭಾವಕರ ಕೌರವರ ಭಂಗಿಸಿ
ದೇವ ಬಿಡಿಸೈ ಸೆರಗನೆಂದೊರಲಿದಳು ಪಾಂಚಾಲೆ ೧೧೫

ಶಿಶುವಧೆಗೆ ಸೀವರಿಸದಸುರನ
ಬಸುರ ಹೂಮಾಲೆಯನು ನೀ ತುರು
ಬಿಸಿದೆಲಾ ನಖರಾಜಿಗಬಲನ ಕಾಯ್ದು ಕರುಣದಲಿ
ಶಿಶುವನಯ್ಯಂಗಿತ್ತು ಜಲಧಿಯ
ಮಂಸುಕನುಗಿದತಿ ಕರುಣೆಯೇ ಹೆಂ
ಗುಸಿನ ಹರಿಬಕೆ ಕೃಪೆಯ ಮಾಡೆಂದೊರಲಿದಳು ತರಳೆ ೧೧೬

ತುರುವ ನುಂಗಿದ ಫಣಿಯ ಗಂಟಲ
ಮುರಿದು ಕಾಯ್ದೆ ಗೋವುಗಳ ಗಿರಿ
ಮರೆಯಲಿಂದ್ರನ ಖಾತಿಗಳುಕದೆ ಕಾಯ್ದೆ ಗೋಕುಲವ
ಮೆರೆದೆಲಾ ಕೃಪೆಯಲಿ ಗಜೇಂದ್ರನ
ಮುರಿಯಲೀಯದೆ ಖಳನು ಸೋಕಿದ
ಸೆರಗ ಬಿಡಿಸೈ ಕೃಷ್ಣಯೆಂದಳು ಪಾಂಡವರ ರಾಣಿ ೧೧೭

ಒದೆದೊಡೊಲಿದವರುಂಟೆ ಬೈದೊಡೆ
ಪದವನಿತ್ತವರುಂಟೆ ಕರುಣಾ
ಸ್ಪದರನಾ ಕೇಳ್ದರಿಯೆನೇ ಕಮಲಾಸನಾದ್ಯರಲಿ
ಪದವ ಸೋಂಕಿದ ಮುಹೊರಡು ತಿ
ದ್ದಿದುದು ಗಡ ಹೆಂಗುಸಿನ ಹೇರಾ
ಳದ ಕೃಪಾಳುವೆ ಕೃಷ್ಣ ಸಲಹೆಂದೊರಲಿದಳು ತರಳೆ ೧೧೮

ಸೊಕ್ಕಿದಂತಕ ದೂತರನು ಸದೆ
ದೊಕ್ಕಲಿಕ್ಕಿಯಜಾಮಿಳನ ಹಿಂ
ದಿಕ್ಕಿಕೊಂಡೆಯಲ್ಲೆ ದುರಾತ್ಮಕ್ಷತ್ರ ಬಂಧದಲಿ
ಸೊಕ್ಕಿದರು ಕೌರವರು ಖಳರಿಗೆ
ಸಿಕ್ಕಿದೆನು ನಿನಗಲ್ಲದಾರಿಗೆ
ಕಕ್ಕುಲಿತೆಬಡುವೆನು ಮುರಾಂತಕಯೆಂದಳಿಂದುಮುಖಿ ೧೧೯

ಚರಣ ಭಜಕರ ಮಾನ ಹಾನಿಯ
ಹರಿಬವಾರದು ಕೃಷ್ಣ ನಾಮ
ಸ್ಮರಣ ಧನಿಕರಿಗುಂಟೆ ಘಲ್ಲಣೆ ಘೋರ ಪಾತಕದ
ಪರಮ ಭಕ್ತಕುಟುಂಬಕನು ನೀ
ಕರುಣೆಯಲ್ಲದೊಡೀ ಕುಟುಂಬಕೆ
ಶರಣದಾರೈ ಕೃಷ್ಣ ಸಲಹೆಂದೊರಲಿದಳು ತರಳೆ ೧೨೦

ನಾಥರಿಲ್ಲದ ಶಿಶುಗಳಿಗೆ ನೀ
ನಾಥನೈ ಗೋವಿಂದ ಸಲಹೈ
ಯೂಥಪತಿಗಳು ಬಿಸುಟ ತರುಣಿಗೆ ಕೃಪೆಯ ನೀ ಮಾಡೈ
ನಾಥರಿಲ್ಲೆನಗಿಂದು ದೀನಾ
ನಾಥಬಾಂಧವ ನೀನಲ್ಲೆ ವರ
ಮೈಥಿಲೀಪತಿ ಮನ್ನಿಸೆಂದೊರಲಿದಳು ಮೃಗನಯನೆ ೧೨೧

ಹೊಲಬುದಪ್ಪಿದ ಹುಲ್ಲೆ ಬೇಡನ
ಬಲೆಗೆ ಬಿದ್ದಂತಾದೆನೈ ಬಲು
ಹಳುವದಲಿ ತಾಯ್ಬಿಸುಟ ಶಿಶು ತಾನಾದೆನೆಲೆ ಹರಿಯೆ
ಕೊಲುವವೈ ಕಾಗೆಗಳಕಟ ಕೋ
ಗಿಲೆಯ ಮರಿಯನು ಕೃಷ್ಣ ಕರುಣಾ
ಜಲಧಿಯೇ ಕೈಗಾಯಬೇಕೆಂದೊರಲಿದಳು ತರಳೆ ೧೨೨

ಅಕಟ ಹಂಸೆಯ ಮರಿಯ ಮೋದುವ
ಬಕನ ತೆಗೆಸೈ ಗಿಡುಗನೆರಗುವ
ಶುಕನ ಶೋಕವ ಮಾಣಿಸೈ ವಾಣಿಯವೆ ಭಕುತರಲಿ
ಪ್ರಕಟಭೂತಗ್ರಹದ ಬಾಧೆಗೆ
ವಿಕಳೆ ನಿನ್ನಯ ಬಿರುದ ತಡೆದೆನು
ಭಕುತವತ್ಸಲನಹರೆ ಸಲಹೆಂದೊರಲಿದಳು ತರಳೆ ೧೨೩

ಆರಿಗೊರಲುವೆನೈ ಖಳಾಪ
ಸ್ಮಾರವಿದೆ ಸೆರೆವಿಡಿದು ತನ್ನಸು
ವಾರಿಗೆಯು ವೈರಾಗ್ಯ ಗಡ ಮತ್ಪ್ರಾಣ ವಿಭುಗಳಿಗೆ
ಘೋರತರ ಭವದುರಿತ ತರುವಿನ
ಬೇರ ಸುಡುವೀ ನಿನ್ನ ನಾಮಕೆ
ನಾರಿಯಕ್ಕೆಯ ನಿಲಿಸಲೇನರಿದೆಂದಳಿಂದುಮುಖಿ ೧೨೪

ಕರುಣಿ ನೀ ಕಾರುಣ್ಯ ಪಾತ್ರದ
ತರಳೆ ತಾ ದೀನಾರ್ತಿ ದುಃಖೋ
ತ್ತರಣ ನೀ ದೀನಾರ್ತ ದುಃಖಿತೆಯಾನು ಜಗವರಿಯೆ
ಪರಮ ಪಾಲಕ ನೀನೆ ಗತ್ಯಂ
ತರದ ವಿಹ್ವಲೆ ತಾನಲಾ ನಿ
ಷ್ಠುರವಿದೇನೈ ಕೃಷ್ಣಯೆಂದೊರಲಿದಳು ತರಳಾಕ್ಷಿ ೧೨೫

ಮರೆದೆನಭ್ಯುದಯದಲಿ ನೀನೆಂ
ದರಿವೆನಾಪತ್ತಿನಲಿ ಮದದಲಿ
ಮುರುಕಿಸುವೆನುಬ್ಬಿನಲಿ ಕಳವಳಿಸುವೆನು ಖೋಡಿಯಲಿ
ಅರಿಯದಜ್ಞರ ಗುಣವ ದೋಷವ
ನರಸುವರೆ ನಿನ್ನಡಿಯ ಕೃಪೆಯನು
ಮರೆಯಲಾಗದೆ ಕೃಷ್ಣಯೆಂದೊರಲಿದಳು ನಳಿನಾಕ್ಷಿ ೧೨೬

ಋಷಿಗಳತಿ ತಾರ್ಕಿಕರು ಕರ್ಮ
ವ್ಯಸನಿಗಳು ಕೋವಿದರು ಮಿಕ್ಕಿನ
ವಿಷಯದೆರೆ ಮೀನುಗಳು ಮೂಢ ಮನುಷ್ಯರೆಂಬವರು
ಒಸೆದು ನಿನ್ನವರೆಂದು ಬಗೆವರೆ
ಬಸಿದು ಬೀಳುವ ಕೃಪೆಯ ನೀ ತೋ
ರಿಸೆಯಿದೇನೈ ಕೃಷ್ಣಯೆಂದೊರಲಿದಳು ನಳಿನಾಕ್ಷಿ ೧೨೭

ತುಸು ಮೊದಲು ಚತುರಾಸ್ಯ ಪರಿಯಂ
ತೆಸೆವುದೇ ಭುವನದಲಿ ಜೀವ
ಪ್ರಸರವಿದ್ದುದು ದುಃಖಸೌಖ್ಯದ ತಾರತಮ್ಯತೆಯಲಿ
ಉಸುರು ಪಸರಣವಿಲ್ಲದೆನ್ನ
ಬ್ಬಸದ ಭೀತಿಯ ಬೇಗೆ ಮಿಂಗೆ ದಾ
ಹಿಸುವುದೈ ಕಾರುಣ್ಯನಿಧಿಯೆಂದೊರಲಿದಳು ತರಳೆ ೧೨೮

ನಂದಗೋಪ ಕುಮಾರ ಗೋಪೀ
ವೃಂದ ವಲ್ಲಭ ದೈತ್ಯಮಥನ ಮು
ಕುಂದ ಮುರಹರ ಭಕ್ತವತ್ಸಲ ಘನ ಕೃಪಾಜಲಧೆ
ನೊಂದೆನೈ ನುಗ್ಗಾದೆನೈ ಗೋ
ವಿಂದ ಕೃಪೆ ಮಾಡಕಟೆನುತ ಪೂ
ರ್ಣೇಂದುಮುಖಿ ಹಲುಬಿದಳು ಬಲು ತೆರದಿಂದಲಿಹು ತನ ೧೨೯

ಇತ್ತ ದ್ವಾರಾವತಿಯೊಳಗೆ ದೇ
ವೋತ್ತಮನು ಭಕುತರಿಗೆ ತನ್ನನು
ತೆತ್ತು ಬದುಕುವನೆಂಬ ಪರಮ ವ್ರತದ ನಿಷ್ಠೆಯನು
ಚಿತ್ತದಲಿ ನೆಲೆಗೊಳಿಸಿ ರುಕ್ಮಿಣಿ
ಸತ್ಯಭಾಮೆಯರೊಳು ಸಮೇಳದ
ನೆತ್ತ ಸಾರಿಯ ಹರಹಿ ಹಾಸಂಗಿಯನು ದಾಳಿಸುತ ೧೩೦

ಕೇಳಿದನು ಮುರವೈರಿ ತನ್ನಯ
ಮೇಳದೈವರ ಸತಿಯ ಹುಯ್ಯಲ
ನಾಳಿನೊಂದಪಮಾನವಾಳ್ವಂಗೆಂಬ ನುಡಿಯಿಂದ
ಕೋಳುಹೋದುವೆ ಪಾಂಡುಪುತ್ರರ
ಬಾಳುವೆಗಳಕಟೆನುತ ಲಕ್ಷ್ಮೀ
ಲೋಲ ಚಿಂತಿಸಿ ನುಡಿದ ರುಕ್ಮಿಣಿದೇವಿಗೀ ಹದನ ೧೩೧

ಕ್ರೂರ ದುರ್ಯೋಧನನು ದ್ರುಪದ ಕು
ಮಾರಿ ಪಾಂಚಾಲೆಯನು ಸಭೆಯಲಿ
ಸೀರೆಯನು ಸುಲಿಯಲ್ಕೆ ಕಾಯ್ಯೆ ಕೃಷ್ಣಯೆಂದೆನುತ
ನಾರಿಯೊರಲುತ್ತಿಹಳು ವುಟ್ಟಾ
ಸೀರೆ ಸೆಳೆಯಲು ಬಳಿಕಲಕ್ಷಯ
ಸೀರೆಯಾಗಲಿಯೆಂದ ಗದುಗಿನ ವೀರ ನಾರಯಣ ೧೩೨

ಹದಿನೈದನೆಯ ಸಂಧಿ

ಸೂ. ಸೋಲದಲಿ ಮನನೊಂದ ಧರಣೀ
ಪಾಲರನು ಸಂತೈಸಿಯಂಧ ನೃ
ಪಾಲ ಕಳುಹಿದರಿವರು ಹೊರವಂಟರು ಪುರಾಂತರವ

ನಿಯುತಮತಿ ಚಿತ್ತವಿಸು ಜನಮೇ
ಜಯ ಮಹೀಪತಿ ದೇವತಾ ಭ
ಕ್ತಿಯಲದೇನಾಶ್ಚರ್ಯವೊ ಶಿವಶಿವಾ ಮಹಾದೇವ
ಜಯ ಜಯೆಂದುದು ನಿಖಿಳಜನ ರಘಾ
ಡಿಯಲಿ ರೋಮಾಂಚಿಸಿ ಸೆಳೆವ ಸೀರೆಗೆ
ಲಯವ ಕಾಣೆನು ಕರುಣವೆಂತುಟೋ ದೇವಕೀಸುತನ ೧

ಉಗಿದು ಹಾಯ್ಕುವ ಖಳನ ನಿಡುದೋ
ಳುಗಳು ಬಳಲಿದವಳ್ಳಿ ಹೊಯ್ದುವು
ಢಗೆಯ ಡಾವರವಾಯ್ತು ಬಹಳ ಸ್ವೇದಜಲ ಜಡಿಯೆ
ತೆಗೆದು ನಿಂದನು ಸೀರೆಯೊಟ್ಟಿಲು
ಗಗನವನು ಗಾಹಿಸಿತು ಗರುವೆಯ
ಬಗೆಗೆ ಬೀಸರವಿಲ್ಲ ಬೆರಗಾದುದು ಮಹಾಸ್ಥಾನ ೨

ಆ ಮಹಾಸತಿ ಶಿವ ಶಿವಾ ಲ
ಜ್ಜಾಮಹೋದಧಿ ಬತ್ತುವುದೆ ನಿ
ರ್ನಾಮರೇ ಕುಂತೀಸುತರು ಪಥ್ಯರೆ ಪರಾಭವಕೆ
ಆ ಮುಕುಂದನ ದಿವ್ಯನಾಮ
ಪ್ರೇಮರಸಕಿದು ಸಿದ್ಧಿಯೆಂದೆನ
ಲಾ ಮಹಾಸ್ಥಾನದಲಿ ಬೆಳೆದುದು ಬೆರಗು ಬಿಂಕದಲಿ ೩

ಅಹಹ ದೈವಪ್ರೇಮವಿದೆಲಾ
ಮಹಿಳೆಯಲಿ ಮಾನವರ ಕೃತಿ ಗೆಲ
ಬಹುದೆ ಗರುವೆಯ ಗಾಹಿಸಿತು ಗೋವಿಂದನಭಿಧಾನ
ಅಹಿತವಹ ಕುರುರಾಜಕುಲ ಘನ
ಗಹನ ಭೀಮ ಧನಂಜಯಾದ್ಯರ
ವಿಹರಣದಲಿ ವಿನಾಶವಹುದೆಂದುದು ಬುಧಸ್ತೋಮ ೪

ಬೆಗಡಿನಲಿ ಮುದಖೇದ ನಯನಾಂ
ಬುಗಳೊಳಾನಂದಾಶ್ರು ಶೋಕದ
ಬಗೆಯೊಳುಬ್ಬಿದ ನಗೆಯುಲಾ ಸ್ವೇದದಲಿ ರೋಮಾಂಚ
ದುಗುಡದಲಿ ಪರಿತೋಷ ಕಂದಿದ
ಮೊಗದಲುಜ್ಜ್ವಲವೃತ್ತಿ ಭೀಷ್ಮಾ
ದಿಗಳೊಳಗೆ ಪಲ್ಲಟಿಸುತಿರ್ದುದು ಪಡಿಮುಹೂರ್ತದಲಿ ೫

ನೆನೆದೆ ನೀನನುಚಿತವನೀ ಹೊ
ತ್ತಿನಲಿ ದ್ರುಪದಾತ್ಮಜೆಯ ದೈವದ
ನೆನಹಿನಲಿ ದೂರಡಗಿತರೆಬೆಳೆಸಾದುದಪಕೀರ್ತಿ
ವನಿತೆಯನು ಬಿಡು ಪಾಂಡು ನೃಪ ನಂ
ದನರ ನೀನೊಲಿದಂತೆ ಮಾಡುವು
ದನುನಯವು ನಿನಗೆಂದು ನುಡಿದನು ವಿದುರ ಕುರುಪತಿಗೆ ೬

ದೈವವೀ ದ್ರೌಪದಿಗೆ ಸೀರೆಯ
ನೀವುದಲ್ಲದೆ ಬಿಡಿಸಲಾಪುದೆ
ದೈವತೊತ್ತಿರ ಹುರುಡುಗೆಲಸದ ಹಿಂಡುಗೂಟದಲಿ
ದೈವವಿವಳಿಗೆ ತಾನಲೇ ತ
ನ್ನೈವರಿಕ್ಕಿದ ಮಾತು ರಿಪುಗಳ
ಮೈವಳಿಯ ನುಡಿಗಾರ ನೀ ಸಾರೆಂದನಾ ಭೂಪ ೭

ನೀತಿ ಮರುಳನು ವಿದುರನೀತನ
ಮಾತಿನಲಿ ಫಲವೇನು ತೊತ್ತಿರೊ
ಳೀ ತಳೋದರಿ ಬೆರೆಸಿ ಬದುಕಲಿ ಕರ್ಣ ಕಳುಹಿವಳ
ಈ ತತುಕ್ಷಣ ದೃಷ್ಟಿಬಂಧನ
ವೇತರಲಿ ಮಾಡಿದಳೊ ಲಜ್ಜಾ
ಜಾತವುಳಿದುದು ಬೆಳೆದ ಸೀರೆಯ ಕಟ್ಟಿ ಹೊರಿಸೆಂದ ೮

ಇವಳಲೇ ನಮ್ಮಿನಿಬರಭಿಮಾ
ನವನು ಸೆಳೆವಳಲಾ ಸ್ವಯಂವರ
ಭವನದಲಿ ಭಂಗಿಸಿದಳೆಮ್ಮನು ಸಭೆಯೊಳಿಪಹಿವರೆ
ಇವಳು ಬಹುವಿಧ ಪುಣ್ಯಶಕ್ತಿಯೊ
ಳೆವಗೆ ಸಿಲುಕಿದಳಿಂದು ತೊತ್ತಿರ
ಸವಡಿವೇಟದ ಸವಿಯು ಸುರಿಯಲಿ ಭಂಡ ಮಿಂಡರಲಿ ೯

ಬೂತುಗೆಡೆವನೊಳೆಂಬೆನೇ ಮರು
ಮಾತನೆಲೆ ಗಾಂಗೇಯ ತಮ್ಮದು
ನೀತಿಯೇ ತಾನಿವರ ಧನವೇ ಧರ್ಮಮಾರ್ಗದಲಿ
ಸೋತನರಸನು ತನ್ನನೆನ್ನನು
ಸೋತುದನುಚಿತವೆಂಬ ಬೆಡಗಿನ
ಮಾತನರಿಯದ ಮೂಢರನು ಸುಡಲೆಂದಳಿಂದುಮುಖಿ ೧೦

ಸೋತುದಿಲ್ಲಾ ನಿನ್ನ ಸೋತುದ
ನೀತಿಯೆಂಬುದು ವಿಹಿತವೇ ತಾ
ನೀತ ನುಡಿಯಲಿ ಧರ್ಮಪುತ್ರನು ಸತ್ಯಸಂಧನಲೆ
ನೀ ತಳೋದರಿ ತರಿಚುಗೆಡದೀ
ಮಾತಿನಲಿ ತಾ ಬಿಡುವೆನೇ ನಿ
ನ್ನಾತಗಳ ನುಡಿಸೆಂದು ಖಳ ಧಟ್ಟಿಸಿದನಂಗನೆಯ ೧೧

ಜೀಯ ಮಾತೇನಿವಳೊಡನೆ ರಿಪು
ರಾಯರಿಗೆ ದಾಸತ್ವವಾಗಲು
ಬಾಯಬಡಿಕೆಯದಾರೊಡವೆ ತದ್ದಾಸ ಧನವಲ್ಲ
ಆಯತಾಕ್ಷಿಯನಿನ್ನು ನಿಮ್ಮ ಪ
ಸಾಯಿತೆಯರಲಿ ಕೂಡು ತೊತ್ತಿರ
ಲಾಯಬೇಡುಪಕಾರವೆಂದೆರಗಿದನು ಕಲಿಕರ್ಣ ೧೨

ಎಲೆಗೆ ಭಜಿಸಾ ಕೌರವಾನ್ವಯ
ತಿಲಕನನು ನಿನ್ನವರ ಮರೆ ನಿ
ನ್ನುಳಿವ ನೆನೆಯೀ ಸಮಯದಲಿ ಕಾಲೋಚಿತ ಕ್ರಮವ
ಬಳಸು ನೀನೆನೆ ಗಜರಿದಳು ಕುರು
ತಿಲಕನನು ತರಿದೊಟ್ಟಿ ರಣದಲಿ
ತಿಳಿರಕುತದಲಿ ದಣಿವೆನನಿಲಜನೆಂದಳಿಂದುಮುಖಿ ೧೩

ಏಕೆ ಕೆಣಕಿದೆ ಕರ್ಣ ಬೂತಿನ
ಬೀಕಲಿನ ಬದಗಿಯನು ಸಮರದೊ
ಳೀಕೆಯನಿಲಜ ಮುರಿವನೆನುತವೆ ತನ್ನ ಮುಂಜೆರಗ
ನೂಕಿ ತೊಡೆಗಳ ತೋರಿಸುತ ಲೋ
ಕೈಕ ವೀರನನೇಡಿಸಿದರ
ವ್ಯಾಕುಲನ ಮನ ಖಂಡಿಯೋದುದು ಖತಿಯ ಹೊಯ್ಲಿನಲಿ ೧೪

ನೋಡಿದನು ಪರಿಘವನು ಕಡೆಗ
ಣ್ಣಾಡಿತಿವದಿರ ಮೇಲೆ ಮೈಯಲಿ
ಝಾಡಿಗೆದರಿತು ರೋಮ ಝಳಪಿಸಿತರುಣಮಯ ನಯನ
ಮೂಡಿತುರಿ ಸುಯ್ಲಿನಲಿ ರೋಷದ
ಬೀಡು ಭೀಮನ ಕಂಡು ಧರ್ಮಜ
ಬೇಡಿಕೊಂಡನು ತನ್ನ ಕೊರಳಿನ ಬೆರಳ ಸನ್ನೆಯಲಿ ೧೫

ಸೈರಿಸಕಟಾ ಭೀಮ ರೋಷ ವಿ
ಕಾರಕಿದು ಹೊತ್ತಲ್ಲ ಸರ್ವ ವಿ
ಕಾರದಲಿ ಕೌರವರು ಮೆರೆಯಲಿ ಕಾಲವವರದಲ
ಧಾರುಣೀಶನ ಧರ್ಮತತ್ತ್ವದ
ಸಾರವುಳಿದರೆ ಸಾಕು ಮಿಕ್ಕಿನ
ನಾರಿ ಧನವಭಿಮಾನ ಬೇಯಲಿಯೆಂದನಾ ಪಾರ್ಥ ೧೬

ಕ್ಷಮೆಯೆ ಧನವೆಂದಿದ್ದೆವಿವಳಲಿ
ಮಮತೆಯನು ಮಾಡಿದೆವೆ ನಾವು
ಭ್ರಮಿಸುವರೆ ದೇವೇಂದ್ರ ತೃಣವಿವನಾವ ಪಾಡೆವಗೆ
ರಮಣಿಯಾಡಿದ ಧರ್ಮಪದವಿದು
ಕುಮತಿಗಳ ಮತವಲ್ಲದಿದ್ದರೆ
ತಮಗೆ ದಾಸಿಯೆ ದ್ರುಪದನಂದನೆಯೆಂದನಾ ಪಾರ್ಥ ೧೭

ಶ್ರುತಿ ತದರ್ಥ ಸ್ಮೃತಿಗಳಲಿ ಪಂ
ಡಿತರು ಪರಿಣತರುಂಟು ಪಾರ್ಥ
ಸ್ಮೃತಿಯ ಬಳಿಕಾದರಿಸುವೆವು ನಿವಗಾದ ದಾಸ್ಯದಲಿ
ಕೃತಕವಿಲ್ಲದೆ ನಡೆದು ತೋರಾ
ಸತಿಯ ಸೆರೆಯನು ಬಿಡಿಸಲೆಮ್ಮಾ
ಕ್ಷಿತಿಯೊಳಾರುಂಟೆಂದು ಕೌರವರಾಯ ಗರ್ಜಿಸಿದ ೧೮

ಭಾಷೆಯೇಕಿವನೊಡನೆ ದ್ರೌಪದಿ
ದಾಸಿಯಲ್ಲೆಂಬವನ ದಿವಸವ
ದೇಸು ಬಲ ಹೋ ಪೂತು ಮರುಳು ತಾನಿಂದ್ರಸುತನೆಂಬ
ಐಸರಲಿ ದೇವೇಂದ್ರ ತೃಣ ಗಡ
ವೈಸಲೇ ನೀ ಮುನಿದಡೇ ನುಡಿ
ದಾಸಭಾವದ ಬಣಗುಗಳಿಗೇಕೆಂದನಾ ಕರ್ಣ ೧೯

ನೂಕಿಸಾ ತೊತ್ತಿರ ಮನೆಗೆ ತಡ
ವೇಕೆ ತರುಣಿಯನಿನ್ನು ನೀನು ವಿ
ವೇಕದಲಿ ನನ್ನಂತೆ ತೆಗೆ ಸಾಕಿವರ ಮಾತೇನು
ಈ ಕುಠಾರರ ಕಳುಹಿ ಕಳೆ ತಾ
ವೇಕೆ ನೃಪಸಭೆಯಲಿ ವರಾಸನ
ವೇಕೆನುತ ಕುರುಪತಿಗೆ ನುಡಿದನು ಕರ್ಣ ಖಾತಿಯಲಿ ೨೦

ಅಹುದಲೇ ಬಳಿಕೇನು ನೀನತಿ
ಬಹಳ ಮತಿಯೈ ಕರ್ಣ ನೀನೀ
ಕುಹಕ ಕೋಟಿಯನೆತ್ತ ಬಲ್ಲೆ ವೃಥಾಭಿಮಾನಿಗಳ
ರಹಣಿ ಸಾಕಂತಿರಲಿ ತೊತ್ತಿರ
ಸಹಚರರ ಸೂಳಾಯಿತರ ಕರೆ
ಮಹಿಳೆಯನು ನೂಕೆಂದು ದುಶ್ಶಾಸನಗೆ ನೇಮಿಸಿದ ೨೧

ಸುಳಿವ ಹುಲ್ಲೆಯ ಸೋಹಿನಲಿ ಕು
ಕ್ಕುಳಿಸಿದರೆ ಕುಕ್ಕುರನ ಕೈಯಲಿ
ತಳುವಹುದೆ ಜನಮೇಜಯ ಕ್ಷಿತಿಪಾಲ ನಿನ್ನವರ
ಬಳಲಿಕೆಯನೇನೆಂಬೆನೈ ಹಿಡಿ
ದೆಳೆಯೆ ಹಲುಬಿದಳಕಟ ರಾಯನ
ಲಲನೆಗೀ ವಿಧಿಯೇ ಮಹಾದೇವೆಂದುದಖಿಳಜನ. ೨೨

ಮಾಣಿಸೈ ಗಾಂಗೇಯ ಗುರು ನಿ
ಮ್ಮಾಣೆಯಡಿ ಕೃಪ ಕೃಪೆಯ ಮಾಡೈ
ರಾಣಿವಾಸಂಗಳಿರ ನಿಲಿಸಿರೆ ನಿಮ್ಮ ಮೈದುನನ
ಪ್ರಾಣವಿದ ಕೊಳ ಹೇಳಿರೌ ಸಾ
ಕೂಣೆಯುವ ಹೊರಲಾರೆನೆನುತಾ
ರಾಣಿ ಹಲುಬಿದಳೊಡೆಮುರುಚಿ ಹೆಣಗಿದಳು ಖಳನೊಡನೆ ೨೩

ಮಾವ ನಿಮ್ಮಯ ನೇತ್ರವಂತ
ರ್ಭಾವದಲಿ ಬೆರಸಿದೊಡೆ ವಿಜ್ಞಾ
ನಾವಲಂಬನ ದಿಟ್ಟಿ ಬೆಂದುದೆ ನಿಮ್ಮ ಹೃದಯದಲಿ
ದೇವಿಯರುಗಿದು ಸೊಗಸಲಾ ಸ
ಖ್ಯಾವಳಿಗೆ ಸೇರುವುದಲಾ ನಿ
ರ್ಜೀವರಾದಿರೆ ನೀವೆನುತ ಹಲುಬಿದಳು ಲಲಿತಾಂಗಿ ೨೪

ಕ್ಷಿತಿಯೆ ಬಿಡಿಸಾ ಸೆರಗನೆಲೆ ಘಾ
ರ್ವತಿಯೆ ತನ್ನದು ಧರ್ಮವಾದೊಡೆ
ಗತಿ ತನಗೆ ನೀವಾಗಿರೌ ಕಮಲಾದಿಶಕ್ತಿಗಳೆ
ಸತಿಯಹಲ್ಯಾದಿತಿ ವರಾರುಂ
ಧತಿ ಮಹಾ ಮಾಯಾದಿ ದೇವ
ಪ್ರತತಿ ಬಿಡಿಸಿರೆ ಸೆರಗನೆಂದೊರಲಿದಳು ಪಾಂಚಾಲೆ ೨೫

ಅಂಧನೊಬ್ಬನೆ ಮಾವ ನೀವೇ
ನಂಧರಾದಿರೆ ಪಾಂಡು ಕರುಣಾ
ಸಿಂಧು ನೀ ಸೈರಿಸುವುದೇ ತನ್ನೀ ವಿಪತ್ತಿನಲಿ
ಅಂಧಕಾಸುರಮಥನ ನೀನೇ
ಬಂಧಿಸಿದೆಲಾ ಪೂರ್ವ ವರ ಸಂ
ಬಂಧವನು ನೀ ಸೆರಗ ಬಿಡಿಸೆಂದೊರಲಿದಳು ತರಳೆ ೨೬

ಸೊಸೆಯಲಾ ದೇವೇಂದ್ರಯೆನ್ನಯ
ಘಸಣಿ ಯಾರದು ಹಿರಿಯ ಮಾವನ
ವಶವಲಾ ತ್ರೈಜಗದ ಜೀವರ ಜೀವ ವಿಭ್ರಮಣ
ಉಸುರು ನಿನ್ನಾಧೀನವೀ ದು
ರ್ವ್ಯಸನಿಗಳ ಕೊಂಡಾಡುವರೆ ಕರು
ಣಿಸು ಸಮೀರಣಯೆಂದು ಹಲುಬಿದಳಾಶ್ವಿನೇಯರಿಗೆ ೨೭

ಮಾವದಿರು ಮೊದಲಾದ ದಿಕ್ಪಾ
ಲಾವಳಿಗೆ ನಮಿಸಿದೆನು ನೈದಿಲ
ತಾವರೆಯ ಮಿತ್ರರಿಗೆ ಮಂಡೆಯೊಳಿಟ್ಟೆನಂಜುಳಿಯ
ಕಾವುದೆನ್ನನು ಹೆಂಗುಸಲ್ಲಾ
ಹಾವು ಹಲಬರ ನಡುವೆ ಸಾಯದು
ದೇವರಿಗೆ ದೂರೈದಲೆಂದೊರಲಿದಳು ಲಲಿತಾಂಗಿ ೨೮

ಬಾಯ ಬಿಡಲೇಕಕಟ ಬಳಲಿದೆ
ತಾಯೆ ಕೈದೋರಿಸರು ನಿನ್ನಯ
ರಾಯರೈವರು ಕೆಲಬಲದ ಜನರೇನು ಮಾಡುವರು
ನ್ಯಾಯ ನಿನ್ನದು ದೈವದೊಲುಮೆಯ
ದಾಯ ತಪ್ಪಿತು ಬರಿದೆ ಧೈರ್ಯದ
ಬೀಯ ಮಾಡದಿರೆಂದು ನುಡಿದನು ವಿದುರನಂಗನೆಗೆ ೨೯

ಎಲೆಗೆ ನಿನ್ನವರೇನ ಮಾಡುವ
ರೊಲೆಯೊಳಡಗಿದ ಕೆಂಡವಿವರ
ಗ್ಗಳಿಕೆ ನಂದಿದುದೆನುತ ಮುಂಜೆರಗೆತ್ತಿ ಮಾನಿನಿಗೆ
ಖಳನು ತೊಡೆಗಳ ತೋರಿಸಿದೊಡತಿ
ಮುಳಿದು ಕೊಟ್ಟಳು ಶಾಪವನು ನಿ
ನ್ನಳಿವು ತೊಡೆಯಲಿ ಮುಗಿವುದೆಂದಳು ಮುಗುದೆ ಖಾತಿಯಲಿ ೩೦

ಕಡಲ ತೆರೆಗಳ ತರುಬಿ ತುಡುಕುವ
ವಡಬನಂದದಿ ಮೇಘಪಟಲವ
ನೊಡೆದು ಸೂಸುವ ಸಿಡಿಲಿನಂದದಿ ಸಭೆಯೊಳಡಹಾಯ್ದು
ಕುಡಿ ಕುಠಾರನ ರಕುತವನು ತಡೆ
ಗಡಿ ಸುಯೋಧನನೂರುಗಳನಿ
ಮ್ಮಡಿಸಿ ಮುನಿಯಲಿ ಧರ್ಮಸುತನೆನುತೆದ್ದನಾ ಭೀಮ ೩೧

ಹೆದರು ಹೊಕ್ಕುದು ಸಭೆಗೆ ಕೌರವ
ನೆದೆ ಬಿರಿದುದಾಸ್ಥಾನ ಜಲನಿಧಿ
ಕದಡಿತುಕ್ಕಿದ ಬೆರಗಿನಲಿ ಬೆಳ್ಳಾದನವನೀಶ
ಹದನಹುದು ಹಾಯೆನುತಲಿದ್ದರು
ವಿದುರ ಭೀಷ್ಮ ದ್ರೋಣರಿತ್ತಲು
ಕೆದರುಗೇಶದ ಕಾಂತೆ ಹುದಿದಳು ಹರುಷ ಪುಳಕದಲಿ ೩೨

ಒಡೆಯನೈತರಲಿಕ್ಕುದೋಟದ
ಬಡ ನರಿಗಳೋಡುವವೊಲೀಕೆಯ
ಹಿಡಿದೆಳೆವ ಖಳ ಹಾಯ್ದನಾ ಕೌರವನ ಹೊರೆಗಾಗಿ
ನುಡಿ ತರುಣಿ ತನ್ನಾಣೆ ಭೀತಿಯ
ಬಿಡಿಸಿದೆನಲಾ ರಾಯನಾಜ್ಞೆಯ
ತಡಿಕೆವಲೆ ನುಗ್ಗಾಯ್ತು ಹೋಗಿನ್ನೆಂದನಾ ಭೀಮ ೩೩

ಉರಿವ ಕೋಪಾಗ್ನಿಯಲಿ ಕರ್ಣನ
ಶಿರದ ಭಾಂಡದಲಿವನ ನೊರೆ ನೆ
ತ್ತರಿನಲಿವನಗ್ರಜನ ಕೊಬ್ಬಿದ ನೆಣನ ಕೊಯ್ಕೊಯ್ದು
ದುರುಳ ಶಕುನಿಯ ಕಾಳಿಜದೊಳೊಡೆ
ವೆರೆಸಿ ಕುದಿಸಿ ಮಹೋಗ್ರಭೂತದ
ನೆರವಿಗುಣಲಿಕ್ಕುವೆನು ಸತಿ ಕೇಳೆಂದನಾ ಭೀಮ ೩೪

ಕೊಂಬೆನೇ ಧರ್ಮಜನ ಧರ್ಮದ
ಡೊಂಬನೀ ಮುದುಗುರುಡನಿಕ್ಕಿದ
ನಂಬುಗೆಯ ವಿಷವೈಸಲೇ ತಲೆಗೇರಿತಗ್ರಜನ
ಡೊಂಬಿಗರ ಡಾವರಿಗರಿವದಿರ
ತಿಂಬೆನೀಗಳೆ ತರುಣಿ ಕೇಳೆನು
ತಂಬುಜಾಕ್ಷಿಯ ಸಂತವಿಟ್ಟನು ಕುರುಳ ನೇರಿಸುತ ೩೫

ಇಳಿದನರ್ಜುನನಾ ಸಭಾಮಂ
ಡಲದ ವೇದಿಯನಹಹ ಧರ್ಮಜ
ನುಳಿವನೇ ನುಡಿಯೆಡಹಿದರೆ ಸಿಗುರೇಳ್ಗು ಸದ್ಗುಣಕೆ
ಕಳವಳದ ಕಾಹುರದ ಕಾಲುವೆ
ಗೊಳಗು ಕೊಡದಿರು ಭೀಮ ರಿಪುಗಳ
ಹಿಳಿವಡಿದು ಹೊತ್ತಲ್ಲೆನುತ ಹಿಡಿದನು ವೃಕೋದರನ ೩೬

ಮಾಣಲದು ಕೌರವರ ನೂರ್ವರ
ಗೋಣ ಬನ ಕಾಳಗದೊಳೆನ್ನಯ
ಕೇಣಿ ತನ್ನಯ ಗದೆಗೆ ದುರಿಯೋಧನನ ತೊಡೆಗಳಿಗೆ
ವಾಣಿಯವು ದುಶ್ಶಾಸನನ ತನಿ
ಶೋಣಿತವ ತಾ ಕುಡಿಯದಿರೆ ನಿ
ನ್ನಾಣೆ ಸೈರಣೆಗಿದುವೆ ಫಲವೆಂದೊದರಿದನು ಭೀಮ ೩೭

ಧರಣಿ ಜಲ ಪಾವಕ ಸಮೀರಾ
ದ್ಯರುಗಳರಿತಿರಿ ಶಕ್ರ ನೈಋತ
ವರುಣ ವಾಯು ಕುಬೇರ ಯಮರೆಂಬಖಿಳ ದಿಗಧಿಪರು
ಬರೆದುಕೊಂಡಿರಿ ಭಾಷೆಯನು ಸುರ
ನರ ಫಣಿವ್ರಜವೆಂಬ ಭೀಮನ
ಧರಧುರದ ಧಟ್ಟಣೆಗೆ ಧೃತಿಗೆಟ್ಟುದು ಕುರುಸ್ತೋಮ ೩೮

ಬರಸಿರೈ ಭಾಷೆಯನು ದೇವಾ
ಸುರರ ಸಾಕ್ಷಿಯಲಾಯ್ತು ಕರ್ಣನ
ಕೊರಳಿಗೆನ್ನಯ ಬಾಣಕುಂಗುರವುಡಿಕೆಯಿಂದಿನಲಿ
ಸುರ ನರೋರಗರರಿದಿರೆಂದ
ಬ್ಬರಿಸಿದನು ಕಲಿಪಾರ್ಥ ಶಕುನಿಯ
ಶಿರಕೆ ಕೊಟ್ಟೆನು ಸಂಚಕಾರವನೆಂದ ಸಹದೇವ ೩೯

ಅರಸ ಕೇಳಾಶ್ಚರ್ಯವನು ಗಜ
ಪುರದೊಳಗೆ ನೆಲ ಬಾಯ ಬಿಟ್ಟುದು
ಸುರಿದುದರುಣಾಂಬುವಿನ ಮಳೆ ತತ್ಪುರದ ಮಧ್ಯದಲಿ
ನರಿಗಳವನಿಪನಗ್ನಿ ಹೋತ್ರದೊ
ಳೊರಲಿದವು ಸಸ್ವೇದದಲಿ ಹೂಂ
ಕರಿಸುತಿರ್ದವು ದೇವತಾ ಪ್ರತಿಮೆಗಳು ನಗರಿಯಲಿ ೪೦

ಉಗುಳಿದವು ಕುಳುಗಿಡಿಗಳನು ಕೈ
ದುಗಳು ವಾರುವ ಪಟ್ಟದಾನೆಗ
ಳೊಗುಮಿಗೆಯ ಕಂಬನಿಗಳಭ್ರದಿ ಧೂಮಕೇತುಗಳು
ನೆಗಳಿದವು ಬಿರುಗಾಳಿ ಗಿರಿಗಳ
ಮಗುಚಿ ಮುರಿದವು ದೇವತಾ ಭವ
ನಗಳ ಶಿಖರವನಂತವದ್ಭುತವಾಯ್ತು ನಿಮಿಷದಲಿ ೪೧

ಬಾರಿಸಿತು ದೆಸೆದೆಸೆಗಳಲಿ ಹಾ
ಹಾ ರವಾವಿರ್ಭಾವ ತೊಳಗಿರೆ
ತಾರಕೆಗಳಿನ ಬಿಂಬವನು ಝೋಂಪಿಸಿದನಾ ರಾಹು
ತೋರಣದಲುರಿ ತಳಿತು ರಾಜ
ದ್ವಾರ ಹೊಗೆದುದು ದೆಸೆಗಳಂಬರ
ಧಾರುಣಿಯೊಳುತ್ಪಾತ ಬಿಗಿದುದು ಮೊಗೆದುದದ್ಭುತವ ೪೨

ನಡುಗಿತಿಳೆ ನಡು ಹಗಲುಗತ್ತಲೆ
ಯಡಸಿತಾಕಾಶದಲಿ ಹೆಮ್ಮರ
ನುಡಿದು ಬಿದ್ದುವು ಸಲಿಲವುಕ್ಕಿತು ಕೂಡೆ ಕೆರೆತೊರೆಯ
ಉಡಿದವವದಿರ ಕೈಯ್ಯ ಕೈದುಗ
ಳೊಡನೊಡನೆ ಸಿಡಿಲೆರಗಿತಾ ಸಭೆ
ಸೆಡೆದುದಲ್ಲಿಯದಲ್ಲಿ ಹುದುಗಿತು ಭೀತಿಗರ ಹೊಡೆದು ೪೩

ಅಹಹ ಭೂತಕ್ಷೋಭವಿದು ನಿ
ರ್ದಹಿಸುವುದು ಕುರುಕುಲವನಕಟೀ
ಮಹಿಳೆಯೊರಲಿದಳಮರ ನಿಕರಕೆ ದೈವಕೃತವಿದಲೆ
ಕುಹಕಿ ಮಕ್ಕಳನಿಕ್ಕಿ ಮೌನದೊ
ಳಿಹರೆ ಬಾ ಧೃತರಾಷ್ಟ್ರ ಪಾಂಡವ
ಮಹಿಳೆಯನು ಸಂತೈಸು ನಡೆ ನಡೆಯೆಂದನಾ ಭೀಷ್ಮ ೪೪

ಇದಕೆ ನಿಸ್ಸಂದೇಹವೇ ವರ
ಸುದತಿಯನು ನೀ ಬೇಡಿಕೊಳು ಯ
ಜ್ಞದಲಿ ಪಾವಕಗುದಿಸಿದಳು ಪಾಂಚಾಲೆ ಮಾನಿನಿಯೆ
ಇದು ಭವತ್ಸಂತಾನ ವಿಲಯಾ
ಸ್ಪದ ಕಣಾ ನಡೆ ಪಾಪಿಯೆಂದಾ
ವಿದುರ ಗುರು ಕೃಪರೌಕಿದರು ಧೃತರಾಷ್ಟ್ರ ಭೂಪತಿಯ ೪೫

ಖೇದ ಮಿಗೆ ನಡೆತಂದು ನೃಪತಿ ತ
ಳೋದರಿಯ ನುಡಿಸಿದನು ಮಗಳೆ ವಿ
ಪಾದವನು ಬಿಡು ಮಾತ ಮನ್ನಿಸು ಮಾವ ನಾ ನಿನಗೆ
ಈ ದುರಾತ್ಮರ ಮಾತು ಬೇಡ ವಿ
ಭೇದವೇ ದುಸ್ಸಳೆಗೆ ನಿನಗೆಂ
ದಾದರಿಸಿ ನುಡಿದನು ವಿಪತ್ತಿನಲಾ ಮಹಾಸತಿಯ ೪೬

ಮಗಳಹೆನು ಸೊಸೆಯಹೆನು ನಿಮ್ಮಯ
ಮಗನ ಕಣ್ಣಿಗೆ ಕಾಳಕೂಟದ
ಮಗಳೊ ಸೊಸೆಯೋ ನಾದಿನಿಯೊ ಬೆಸಗೊಳ್ಳಿ ನಿಮ್ಮವನ
ಅಗಡು ಮಾಡಿದ ನಿಮ್ಮ ಮಕ್ಕಳ
ವಿಗಡತನಕಂಜಿದರೊ ದುರಿತದ
ಸೊಗಡಿಗಂಜಿದರೋ ಪೃಥಾ ಸುತರೆಂದಳಿಂದುಮುಖಿ ೪೭

ಧರ್ಮ ನಿಮ್ಮದು ತಾಯೆ ಕಿಲ್ಬಿಷ
ಕರ್ಮವೆಮ್ಮದು ಲೋಕವರಿಯಲು
ನಿರ್ಮಲರು ನೀವ್ ಪಾಪ ಪಂಕಿಲ ಹೃದಯರಾವ್ ಜಗಕೆ
ದುರ್ಮತಿಗಳಿವದಿರ ಕುಚೇಷ್ಟೆಯ
ನೆಮ್ಮನೀಕ್ಷಿಸಿ ಮರೆ ಮಗಳೆ ಸ
ದ್ಧರ್ಮಮತಿಗಳು ನೀವೆನುತ ತಿಳುಹಿದನು ದ್ರೌಪದಿಯ ೪೮

ದುರುಳರೆನ್ನವದಿರು ದುರಂತಃ
ಕರಣರಾವ್ ದುಶ್ಚೇಷ್ಟೆಯೆಮ್ಮದು
ದುರಭಿಮತ ದುಷ್ಪೂರ್ವರೆನ್ನ ಕುಮಾರರಭಿಧಾನ
ಕರುಣೆಗಳು ಕಮನೀಯ ಗುಣ ಬಂ
ಧುರರು ಶೌರ್ಯಬಲ ಪ್ರಭಾವೋ
ತ್ತರರು ನಿನ್ನವರೆಂದು ನಯದಲಿ ತಿಳುಹಿದನು ಸತಿಯ ೪೯

ತಾಯೆ ಬೇಡೌ ವರವ ತಾನ
ನ್ಯಾಯದಲಿ ನಿಮ್ಮನು ನಿರರ್ಥಕ
ನೋಯಿಸಿದೆನದ ನನೆಯದಿರಿ ಸರ್ವಾಪರಾಧವನು
ದಾಯಗೆಡೆ ನಿನ್ನವರು ಕೊಲುವರೆ
ಕಾಯಲಾಪವರುಂಟೆ ವರ ಸ
ತ್ಯಾಯುಧರಲೇ ನೀವೆನುತ ತಿಳುಹಿದನು ಧೃತರಾಷ್ಟ್ರ ೫೦

ವರನನಿತ್ತಿರೆ ಮಾವ ಭೂಮಿ
ಶ್ವರರ ದಾಸ್ಯವ ಬಿಟ್ಟು ಕಳೆ ಮ
ತ್ತೆರಡನೆಯ ವರವೇನು ವಚನಿಸು ಕೊಟ್ಟೆ ನಾ ನಿನಗೆ
ವರ ವೃಕೋದರ ನಕುಲ ಸಹದೇ
ವರಿಗೆ ಕೊಡಿ ಶಸ್ತ್ರಾಸ್ತ್ರ ಗಜರಥ
ತುರಗ ನಿಕರವನೆಂದಡೆಂದನು ಮತ್ತೆ ಧೃತರಾಷ್ಟ್ರ ೫೧

ವರವೆರಡು ಸಂದವು ಮನೋರಥ
ಭರಿತವಾಗಲಿ ಮತ್ತೆ ಹೇಳೆನೆ
ತರುಣಿಯೆಂದಳು ಧರ್ಮಶಾಸ್ತ್ರ ಪ್ರಕಟ ಪದ್ಧತಿಯ
ವರವು ವೈಶ್ಯರಿಗೊಂದು ನೃಪಸತಿ
ಗೆರಡು ನೃಪರಿಗೆ ಮೂರು ಭೂದೇ
ವರಿಗೆ ನೂರಧಿಕಾರವೆಂದಳು ನಗುತ ಪಾಂಚಾಲೆ ೫೨

ಹಾರಲತಿಶಯ ತೃಷ್ಣೆ ನಾಶಕೆ
ಕಾರಣವಲೇ ಮಾವ ವರವಿದು
ಭಾರಿಯಾದರೆ ಬೇಡ ಲಘುವನು ಕರುಣಿಸುವುದೆನಲು
ಭಾರವಾವುದು ಮಗಳೆ ಕೊಟ್ಟೆನು
ಧಾರುಣೀಪತಿ ಬಿಜಯಮಾಡಲಿ
ವೈರಬಂಧದ ಕಂದು ಕಲೆಯನು ಮರೆದು ಕಳೆಯೆಂದ ೫೩

ಪೂತುರೇ ಪಾಂಚಾಲೆ ಭುವನ
ಖ್ಯಾತೆಯಾದೆಗೆ ಜಾಗು ನಿನ್ನಯ
ಚೈತಲೆಯ ಮಣಿ ಮಾರುವೋದುದ ಮತ್ತೆ ಬಿಡಿಸಿದಲೆ
ಬೀತ ಮರ ಫಲವಾಯ್ತಲಾ ನಿ
ನ್ನಾತಗಳ ಬಹುಖೇದ ಜಲಧಿಗೆ
ಸೇತುವಾದೆಗೆ ನೀನೆನುತ ತಲೆದೂಗಿದನು ಕರ್ಣ ೫೪

ಹೊಕ್ಕಗೂಡಿನ ಹುಲಿಗಳನು ಹೊರ
ಗಿಕ್ಕಿದೆಯಲಾ ಇರುಬಿನಲಿ ಬಿ
ದ್ದಕ್ಕಲಂಗಳ ನೋಯಲೀಯದೆ ಕೆಲಕೆ ತೆಗೆದೆಯಲ
ಸೊಕ್ಕಿದುರು ಮೀನುಗಳ ಗಂಟಲೊ
ಳಿಕ್ಕಿದವಲಾ ಗಾಣ ಗಂಟಲ
ಸಿಕ್ಕ ಬಿಡಿಸಿದೆ ಗರುವೆ ನೀನೆಂದುಲಿದನಾ ಕರ್ಣ ೫೫

ಘುಡುಘುಡಿಸಿದನು ರೋಷವಹ್ನಿಯ
ತಡಿಯ ಹೊಕ್ಕನು ಬಿಗಿದ ಹುಬ್ಬಿನ
ಬಿಡೆಯ ಬವರಿಯ ಲಳಿಯ ಲವಣಿಯ ಲೋಚನ ದ್ವಯದ
ಕಡು ಮುಳಿಸಿನುಬ್ಬಟೆಯ ಮಾರುತಿ
ಕಡುಹಿನಲಿ ಭುಗುಭುಗಿಪ ಭಾರಿಯ
ಕಿಡಿಗೆದರಿ ನೋಡಿದನು ಬಾಗಿಲ ಲಾಳವಿಂಡಿಗೆಯ ೫೬

ಹಗೆಗಳೇ ಕೌರವರು ತೆಗೆ ಬಲು
ವಗೆ ಕಣಾ ಕಾಮಾದಿ ರಿಪುಗಳು
ಸೆಗಳಿಕೆಯ ಸಸಿಯಾಗವೇ ನಿಜ ಸತ್ಯ ಭಾಷೆಗಳು
ಉಗುಳುಗುಳು ರೋಷವನು ರಾಧೆಯ
ಮಗ ವಿಕಾರಿ ಕಣಾ ವೃಕೋದರ
ಬೆಗಡುಗೊಳಿಸದಿರೆಮ್ಮನೆಂದನು ಧರ್ಮನಂದನನು ೫೭

ಬಾ ವೃಕೋದರ ನಕುಲ ಬಾ ಸಹ
ದೇವ ಬಾರೈ ತಮ್ಮ ಫಲುಗುಣ
ದೇವಿಯರು ನೀವ್ ಬನ್ನಿಯೆನಲವನೀಶನೈತಂದು
ಆವುದೈ ಕರ್ತವ್ಯ ನೀವೇ
ದೈವ ಗುರುಪಿತರೆಂದು ಮಿಗೆ ಸಂ
ಭಾವನೋಕ್ತಿಯನಾಡಿದನು ಧೃತರಾಷ್ಟ್ರ ಭೂಪತಿಗೆ ೫೮

ಮಕ್ಕಳೆನಗಲ್ಲವರು ನೀವೇ
ಮಕ್ಕಳೈವರು ಮಗನೆ ನಮ್ಮದು
ಮಕ್ಕಳಾಟಿಕೆಯಾಯ್ತುಲಾ ಸೌಬಲನ ದೆಸೆಯಿಂದ
ಮಿಕ್ಕು ನೀ ಸೈರಿಸುವುದೆಮ್ಮದು
ಬಕ್ಕುಡಿಯ ಬೇಳಂಬ ನಿಮ್ಮಲಿ
ಕಕ್ಕುಲಿತೆಯಿಲ್ಲೆಂದು ತೆಗೆದಪ್ಪಿದನು ಧರ್ಮಜನ ೫೯

ಎನ್ನನೀಕ್ಷಿಸಿ ಮಗನೆ ಮರೆ ನಿನ
ಗನ್ಯಳೇ ಗಾಂಧಾರಿ ಪಿತನೆಂ
ದೆನ್ನ ಕಾಬಿರಿ ವೃದ್ಧನೆಂದು ಗತಾಕ್ಷ ತಾನೆಂದು
ಮನ್ನಿಸುವಿರೆಲೆ ಮಕ್ಕಳಿರ ಸಂ
ಪನ್ನಸತ್ಯರು ನೀವು ಕರ್ಮಿಗ
ಳೆನ್ನವರು ದೋಷಾಭಿಸಂಧಿಯ ಮರೆದು ಕಳೆಯೆಂದ ೬೦

ರೂಢಿಗಗ್ಗದ ರಾಜಸೂಯದ
ಲೂಡಿ ನಿರ್ಜರ ಕಟಕವನು ಖಯ
ಖೋಡಿಯಿಲ್ಲದೆ ನಿಲಿಸಿದೈ ತ್ರಿದಿವದಲಿ ಪಾಂಡುವನು
ಮಾಡುವೆಯಲಾ ಮಗನೆಯೆನ್ನೀ
ಗೂಡ ಬಿಸುಟರೆ ಸುರರ ಸಂಗಡ
ವಾಡುವಂತಿರೆ ತನಗೆ ಗತಿ ನೀನಲ್ಲದಾರೆಂದ ೬೧

ಪಾಲಿಸವನಿಯನೆನ್ನ ಮಕ್ಕಳ
ಖೂಳತನವನು ಮನಕೆ ತಾರದಿ
ರಾಲಿಸದಿರಪರಾಧಿ ವಾಚಾಳರ ವಚೋತ್ತರವ
ಕಾಲ ದೇಶಾಗಮದ ನಿಗಮದ
ಡಾಳವರಿದೈಹಿಕ ಪರತ್ರ ವಿ
ಟಾಳಿಸದೆ ನಡೆ ಕಂದಯೆಂದನು ಮರಳಿ ತೆಗೆದಪ್ಪಿ ೬೨

ತರಿಸಿದನು ಮಡಿ ವರ್ಗದಮಲಾಂ
ಬರವನಂಬುಜಮುಖಿಗೆ ರತ್ನಾ
ಭರಣವನು ವಿವಿಧಾನುಲೇಪನ ಚಿತ್ರಸಂಪುಟವ
ಅರಸನಿತ್ತನು ವೀಳಯವ ಕ
ರ್ಪುರದ ತವಲಾಯಿಗಳನಭ್ಯಂ
ತರಕಿವರ ಕಳುಹಿದನು ಗಾಂಧಾರಿಯನು ಕಾಣಿಸಿದ ೬೩

ನೋಡಲಾಗದು ಮಕ್ಕಳಿರ ಕುಲ
ಗೇಡಿಗರ ಕಪಟವನು ನಮ್ಮನು
ನೋಡಿ ಮರೆವುದು ಪಾಂಡುವೆಂದಿಹುದಂಥ ಭೂಪತಿಯ
ನಾಡೆ ನೊಂದೌ ತಾಯೆ ಬಾ ಮಗ
ಮಾಡಿದನುಚಿತ ಕರ್ಮವೆಲ್ಲವ
ಮಾಡಿದೆನು ತಾನೆಂದಳಾ ದ್ರೌಪದಿಗೆ ಗಾಂಧಾರಿ ೬೪

ಮರೆದೆನಾಗಳೆ ವಿಗಡ ವಿಧಿಯೆ
ಚ್ಚರಿಸಿದರೆ ಹರಿಭಕ್ತಿ ಮುಖದಲಿ
ಮುರಿದುದೆಮ್ಮಯ ಪೂರ್ವ ದುಷ್ಪ್ರಾರಬ್ಧ ಕರ್ಮಫಲ
ಹೆರರನೆಂಬುದು ಖೂಳತನವೇ
ನರಿಯದವರೇ ಪಾಂಡುಸುತರೆಂ
ದುರುಬೆಯಲಿ ಬಿನ್ನವಿಸಿದಳು ಗಾಂಧಾರಿಗಬುಜಾಕ್ಷಿ ೬೫

ಸಾಕು ನೇಮವ ಕೊಡಿಯೆನುತ ಕುಂ
ತೀ ಕುಮಾರರು ಬೀಳುಕೊಂಡರು
ನೂಕಿ ಹೊಕ್ಕುದು ದಾರವಟ್ಟದಲಿವರ ಪರಿವಾರ
ತೋಕಿದವು ಸೀಗುರಿಗಳೆಡ ಬಲ
ದಾಕೆಯಲಿ ಪಾಂಡವ ಕುಮಾರಾ
ನೀಕ ಬೆರಸಿತು ಗಜತುರಗ ರಥ ಪಾಯದಳ ಸಹಿತ ೬೬

ಕಳೆದೆವೇ ಖಳರೊಡ್ಡಿದಿರುಬಿನ
ಕುಳಿಗಳನು ಕೈತಪ್ಪು ಮಾಡದೆ
ಸಲಹಿದೆವೆ ಸತ್ಯವನು ಸುಜನರ ಕಲೆಗೆ ಸಂದೆವಲೆ
ಕಳವಳದ ಕಡುಗಡಲೊಳಾಳದೆ
ಸುಳಿದೆವಿತ್ತಲು ಶಿವ ಶಿವಾ ಯದು
ತಿಲಕ ಗದುಗಿನ ವೀರ ನಾರಾಯಣನ ಕರುಣದಲಿ ೬೭

ಹದಿನಾರನೆಯ ಸಂಧಿ

ಸೂ. ದ್ಯೂತಮುಖದಲಿ ನಿಖಿಳ ರಾಜ್ಯವ
ಸೋತು ತನ್ನನುಜಾತ ಮುನಿ ಸಂ
ಘಾತ ಸಹಿತವನೀಶ ವನವಾಸಕ್ಕೆ ಹೊರವಂಟ ॥

ಕೇಳು ಜನಮೇಜಯ ಧರಿತ್ರೀ
ಪಾಲ ಕುಂತಿಯ ನಂದನರು ತ
ಮ್ಮಾಲೊಡನೆ ಹೇಳಿದರು ಸೌಭದ್ರಾದಿ ತನಯರಿಗೆ
ಬಾಲಕಿಯ ಬೇಳಂಬವನು ಜೂ
ಜಾಳಿಗಳ ಜಜ್ಝಾರತನವನು
ಕೇಳಿ ಬೈದುದು ಸೇನೆ ಖತಿಯಲಿ ಖಳಚತುಷ್ಟಯವ ೧

ಎತ್ತಿತೀ ಪಾಳಯವು ನಿಜಪುರ
ದತ್ತ ತಿರುಗಿತು ಜನಜನಿತ ರಾ
ಜೋತ್ತಮನ ಕಡೆಯಾಯ್ತು ಸತ್ಯಕ್ಷಮೆ ಪರಾಕ್ರಮಕೆ
ಇತ್ತಲಡುಪಾಯ್ಬೇಗೆ ಬಿಸುಗುದಿ
ಕಿತ್ತಡವು ಕಾರ್ಪಣ್ಯ ಕಪಟ ಖ
ಳೋತ್ತಮರ ಹೃದಯದಲಿ ಹುದುಗಿತು ನೃಪತಿ ಕೇಳೆಂದ ೨

ರವಿಯುದಯದಲಿ ಕೌರವೇಂದ್ರನ
ಭವನಕೈತಂದನು ಕುಠಾರರ
ಜವಳಿಯನು ಕರೆಸಿದನು ರಾಧಾಸುತನ ಸೌಬಲನ
ಅವನಿಪತಿ ಗಾಂಧಾರಿಯರು ಪಾಂ
ಡವರ ಮನ್ನಿಸಿ ಕಳುಹಿದರು ತ
ಮ್ಮವನಿಗೈದಿದರೆಂದನಾ ದುಶ್ಶಾಸನನು ನಗುತ ೩

ಮುರಿಮುರಿದು ಪಟ್ಟಣವ ನೋಡುತ
ನರ ವೃಕೋದರರೌಡುಗಚ್ಚುತ
ತಿರುಗಿದರು ಗಡ ಗಾಢ ಬದ್ಧ ಭ್ರುಕುಟಿ ಭೀಷಣರು
ಕರಿಯ ಸೊಗಡಿನ ಮೃಗಪತಿಗೆ ಮೈ
ಹರಿದ ಹಂದಿಗೆ ನೊಂದ ಹಾವಿಂ
ಗರಸ ಮೈ ಚಾಚಿದೆಯಲಾ ನೀನೆಂದನಾ ಶಕುನಿ ೪

ಅವರ ಹೆಂಡಿರ ಮುಂದಲೆಯ ಹಿಡಿ
ದವಗಡವ ಮಾಡಿಸಿದೆ ಪಟ್ಟದ
ಯುವತಿಯಾಕೆಯ ಭಂಗಬಡಿಸಿದೆ ನಿನ್ನಲಾಪನಿತ
ಅವಳ ದೈವೋದಯವದೈಸಲೆ
ಸವಡಿ ಸೀರೆಯ ಸುತ್ತು ಸಡಿಲದು
ನಿವಗದಾಗಳೆ ಮರೆದು ಹಿಂಗಿದುದೆಂದನಾ ಕರ್ಣ ೫

ಬೊಪ್ಪನಿತ್ತನು ವರವನೆವಗದು
ತಪ್ಪಿಸಲು ತೀರುವುದೆ ಭೀಮನ
ದರ್ಪಕರ್ಜುನನುಬ್ಬಟೆಗೆ ಮಾಡಿದೆವು ಮದ್ದುಗಳ
ತಪ್ಪಿಸಿತಲೇ ದೈವಗತಿ ನ
ಮ್ಮಪ್ಪನೇ ಕೆಡಿಸಿದನು ನವಗಿ
ನ್ನಪ್ಪುದಾಗಲಿಯೆಂದು ಸುಯ್ದನು ಕೌರವರರಾಯ ೬

ಜಯವಹುದೆ ನಿರ್ವೇದದಲಿ ನಿ
ರ್ಭಯವಹುದೆ ಬಿಸುಸುಯ್ಲಿನಲಿ ನಿ
ರ್ಣಯವಹುದೆ ರಿಪು ನೃಪರಿಗಿದು ತಾ ನೀತಿ ಮಾರ್ಗದಲಿ
ನಿಯತವಿದು ನಿಶ್ಶೇಷ ನಿಮ್ಮ
ನ್ವಯಕೆ ನಿರ್ವಾಹವನು ಗಾಂಧಾ
ರಿಯಲಿ ನಿಮ್ಮಯ್ಯನಲಿ ಬೆಸಗೊಳ್ಳೆಂದನಾ ಶಕುನಿ ೭

ಅರಸ ಕೇಳ್ ಧೃತರಾಷ್ಟ್ರ ಭೂಪತಿ
ಯರಮನೆಗೆ ನಡೆತಂದರೀ ನಾ
ಲ್ವರು ವಿಷಾದ ವಿಡಂಬ ವಿಹ್ವಲಕರಣವೃತ್ತಿಯಲಿ
ಪರಿವಿಂತದಿ ಕಂಳ್ಳಿರಿಸಿದರು ಸಹ
ಚರನ ಶೋಧಿಸಿ ಕಡು ರಹಸ್ಯದೊ
ಳರಸಿಯನು ಬರಹೇಳಿದರು ಗಾಂಧಾರ ದೇವಿಯನು ೮

ಅವರ ದಾಸ್ಯವ ಬಿಡಿಸಿ ನೀ ರಾ
ಜ್ಯವನು ಕರುಣಿಸಿ ನೀತಿಯಲಿ ನಿ
ಮ್ಮವರ ಕಳುಹಿದಿರೆಂದು ಕೇಳಿದೆವಾಯ್ತು ಪರಿತೋಷ
ಅವರು ನಿವಗತಿ ಭಕ್ತರೈ ಬಾಂ
ಧವರಲೇ ತಪ್ಪೇನು ಧರ್ಮ
ಪ್ರವರರಿಗೆ ನೀವೊಲಿದಿರೆಂದನು ಕೌರವರರಾಯ ೯

ನಾವಲೇ ಹೊರಗವರ ಹೆಂಡಿರ
ಹೇವಗೆಡಿಸಿದೆವವರ ಸೋಲಿಸಿ
ಜೀವ ಮಾತ್ರವನುಳುಹಿ ಸೆಳೆದೆವು ಸಕಲ ವಸ್ತುಗಳ
ನೀವು ಕರುಣಿಸಿದಿರಿ ಕೃಪಾರಸ
ಭಾವ ಹಿರಿಯರಲುಂಟಲೇ ತ
ಪ್ಪಾವುದೈ ತಪ್ಪಾವುದೆನುತಲ್ಲಾಡಿದನು ಶಿರವ ೧೦

ತಾಯೆ ನೇಮವೆ ಹಗೆಯ ಕೈಯಲಿ
ಸಾಯಲಾರೆವು ಸಾಗರಾಂತದ
ರಾಯರಿಲ್ಲಾ ಹೊರೆಯಲಾಪೆವು ಬೆಂದ ಬಸುರುಗಳ
ಕಾಯಿದನು ಕರುಣದಲಿ ತಂದೆ ಸ
ಹಾಯವಹ ಪಾಂಡವರ ಕೂಡಿಯೆ
ರಾಯ ಬದುಕಿರಲೆಮ್ಮ ಕಳುಹೆಂದೆರಗಿದನು ಪದಕೆ ೧೧

ಏಕೆ ಬೆಸಗೊಳ್ಳಬಲೆ ಸುತರವಿ
ವೇಕ ವಿಷಮಂಗ್ರಹ ವಿಕಾರ
ವ್ಯಾಕರಣ ದುರ್ಲಲಿತ ದುಷ್ಕೃತವೀಪ್ರಳಾಪವಿದು
ಈ ಕುಲವನೀ ಪುರವನೀ ಲ
ಕ್ಷ್ಮೀಕರವನೀ ಜಗವನೀ ವಿಭ
ವಾಕೃತಿಯನಂಬುಧಿಯೊಳದ್ದುವ ನಿನ್ನ ಮಗನೆಂದ ೧೨

ಸರಿಹಸುಗೆಯಿಂದರ್ಧ ರಾಜ್ಯದ
ಸಿರಿಗೆ ಯೋಗ್ಯರು ಬಾಹುಸತ್ವಕೆ
ಸುರರು ಸರಿಯಿಲ್ಲಿವರ ಪಾಡೇ ಮನುಜ ಜಂತುಗಳು
ಚರಿತವೆಂಬರೆ ಋಷಿಗಳಿಗೆ ಗೋ
ಚರಿಸದವರಾಚರಣೆ ನಿನಗೆಂ
ತರಿ ವಿನಾಶನ ಸಿದ್ಧಿಯೆಂದನು ಮಗಗೆ ಧೃತರಾಷ್ಟ್ರ ೧೩

ಬೇಹವರು ಸರಿರಾಜ್ಯಕದು ಸಂ
ದೇಹವೇ ಮೇಲವರು ಸತ್ವದ
ಸಾಹಸದ ಸತ್ಯದ ಸದಾಚಾರದ ನಿವಾಸರಲೆ
ಸ್ನೇಹಿತರು ನಿನಗವರ ಮೇಗವ
ಗಾಹಿಸಿದೆವನ್ಯಾಯದಲಿ ಸ
ದ್ರೋಹರಾವಿನ್ನೆಮಗೆ ನೇಮವೆಯೆನುತ ಹೊರವಂಟ ೧೪

ಕಲಕಿತರಸನ ಕರಣ ಕಂಗಳ
ಕಂಳಿಗಳಲಿ ನೀರೊರೆತವಕಟಕ
ಟೆಲೆಗೆ ಕಲೆಯಾ ಪಾಪಿ ಮಗನನು ಕುರುಕುಲಾಂತಕನ
ಸೆಳೆದು ತಂದರು ಕರ್ಣ ಶಕುನಿಗ
ಳಳಲಿಗನ ತೆಗೆದಪ್ಪಿದನು ಕುರು
ತಿಲಕ ನಿನ್ನುಳಿದೊಡಲ ಹಿಡಿವೆನೆಯೆಂದನಂಧ ನೃಪ ೧೫

ಏನು ಮಾಡುವೆವವರ ಕೆಡಿಸುವ
ಡೇನು ಹದನನು ಕಂಡೆ ದೈವಾ
ಧೀನ ನಿಷ್ಠುರ ಮುರಿವುದರಿದನ್ಯಾಯ ತಂತ್ರದಲಿ
ಏನು ನಿನ್ನಭಿಮತವು ನಿನ್ನೊಳ
ಗಾನು ಹೊರಗೇ ಕಂದ ನುಡಿ ದು
ಮ್ಮಾನ ಬೇಡೆನ್ನಾಣೆನುತ ಸಂತೈಸಿದನು ಮಗನ ೧೬

ನೊಂದರವರಗ್ಗಳಿಸಿ ಹೃದಯದೊ
ಳೊಂದಿ ಬೆರಸರು ಮರಹು ತೆರಹಿನೊ
ಳಂದಗೆಡಿಸುವರಲ್ಲದುಳುಹರು ನಿನ್ನ ಸಂತತಿಯ
ಒಂದು ಸತ್ತಿಗೆ ನಮ್ಮದಿಲ್ಲಿಗೆ
ನಿಂದುದೆನಿಸಲಿ ನಾವು ನಿಲಲವ
ರೊಂದು ಸತ್ತಿಗೆಯಾಗಿ ಸಲಹಲಿ ಸಕಳ ಭೂತಳವ ೧೭

ಹುದುವ ಸೈರಿಸಿ ಬಳಸಿದರು ದುರು
ಪದಿಯನವರೈವರು ಧರಿತ್ರಿಯ
ಹುದುವ ಸೈರಿಸಲಾರೆನವರೊಡನಿಂದು ಮೊದಲಾಗಿ
ಒದೆದೆವು ಕಳೆ ನಮ್ಮನಿಬರನು ನೇ
ಹದಲಿ ಸಲಹೈವರನು ನೀನಿಂ
ದೊದೆವುದೈವರ ನಮ್ಮ ಹಿಡಿ ಬೇರಿಲ್ಲ ಮತವೆಂದ ೧೮

ಅನಿಲಜನ ಬಾಯ್ಬಡಿಕತನವ
ರ್ಜುನನ ಬರಿಬೊಬ್ಬಾಟ ಸಹದೇ
ವನ ಸಗರ್ವದ ಮಾತು ಮೈಯಿಕ್ಕುವವು ಬಳಿಕಿನಲಿ
ಮನೆಮೊಗವ ಕಾಣಿಸದೆ ಘನ ಕಾ
ನನದೊಳಗೆ ಸುಳಿವಂತೆ ಮಂತ್ರವ
ನೆನೆದೆನಿದು ನಿಮ್ಮಡಿಯ ಚಿತ್ತಕೆ ಬಹರೆ ಬೆಸಸೆಂದ ೧೯

ಮರುಳು ಮಗನೇ ಶಿವ ಶಿವಾ ಮನ
ಬರಡನೇ ತಾನಕಟ ನಿಮ್ಮೈ
ಶ್ವರಿಯ ಹಗೆ ದಾಯಾದ್ಯರುಗಳಭ್ಯುದಯದಲಿ ಸೊಗಸೆ
ದುರುಳರವದಿರು ದೈವಮುಖದೆ
ಚ್ಚರಿಕೆ ಘನಕೆಡರೆಂದು ಮೇಗರೆ
ಹೊರೆಮನದ ಸೂಸಕದ ನೇಹವನರಸುತಿಹೆನೆಂದ ೨೦

ಕರೆಸಿಕೊಡಿ ನೀವಿಲ್ಲಿಗವರೈ
ವರನು ಜೂಜಿನಲೊಂದು ಹಲಗೆಯ
ಲರಸ ನೀ ಚಿತ್ತವಿಸು ಹನ್ನೆರಡಬುದ ವಿಪಿನದಲಿ
ವರುಷವೊಂದಜ್ಞಾತವದರೊಳ
ಗರಿದೆವಾದೊಡೆ ಮರಳಿ ವಿಪಿನಕೆ
ವರುಷ ಹನ್ನೆರಡಕ್ಕೆ ಕೊಡುವೆವು ಮತ್ತೆ ವೀಳೆಯವ ೨೧

ಅಹುದು ಮಂತ್ರವಿದೆಂದು ಚಿತ್ತಕೆ
ಬಹರೆ ಕಳುಹಿ ಮನುಷ್ಯರನು ಕರೆ
ಸಹಿತರನು ವಿದುರಾದಿಗಳ ಕೊಂಡೆಯಕೆ ಕಿವಿಗೊಡದೆ
ಕುಹಕವುಂಟೇ ನಮ್ಮ ಕಳುಹುವು
ದಹ ಮತವ ಬೆಸೆಸೆನಲು ನಿಮ್ಮೊಳು
ಕುಹಕವುಂಟೇ ಮಗನೆ ಕರೆಸುವೆನೀಗ ಪಾಂಡವರ ೨೨

ಪ್ರಾತಿಕಾಮಿಕ ಬಾ ಯುಧಿಷ್ಠಿರ
ಭೂತಳೇಶನ ಕರೆದು ತಾರೈ
ತಾತ ಕಳುಹಿದನೆಂಬುದಿಂದ್ರಪ್ರಸ್ಥದಲ್ಲಿರಲಿ
ಪ್ರೀತಿಪೂರ್ವಕವಲ್ಲದಲ್ಲಿ ವಿ
ಘಾತಿಯಿಲ್ಲೆಂದುಚಿತ ವಚನದೊ
ಳಾತಗಳನೊಡಗೊಂಡು ಬಾ ಹೋಗೆಂದನಂಧನೃಪ ೨೩

ಕೇಳಿದರು ಭೀಷ್ಮಾದಿಗಳು ಬರ
ಹೇಳಿದರೆ ಪಾಂಡವರನಕಟಾ
ಹೇಳಿದರೆ ಕೌರವರ ನೂರ್ವರನಂತಕಾಲಯಕೆ
ಹೇಳಿದರೆ ಹೇಳಿಗೆಯ ಹಾವಿನ
ಮೇಲು ಮುಚ್ಚಳ ಮುರಿಯಲೆಂದಿದ
ಕೇಳಿದೆನೆ ಕೌತುಕವನೆಂದರು ಕುದಿದು ತಮ್ಮೊಳಗೆ ೨೪

ಉರುವ ಮಕ್ಕಳನಿಕ್ಕಿ ಸಾಧಿಸು
ವರಿಕೆ ಯಾವುದು ಹೇಳಲಾಗದೆ
ಕುರಿಗಳೇ ನಿನ್ನವರು ಬಲ್ಲರೆ ಮೇಲಣಪಜಯವ
ಮರುಗುವಳು ಗಾಂಧಾರಿ ಮಕ್ಕಳ
ಹರುವ ಕಂಡರೆ ಮೇಲೆ ನಿನಗೇ
ನರಿಯಬಾರದಲಾ ಮರುಳೆಯೆಂದಳಲಿದನು ಭೀಷ್ಮ ೨೫

ಕೊಂಬುದೇ ಖಳಜನಕೆ ಸಾಧುಗ
ಳೆಂಬ ಮಾತು ವಿಧಾತೃಕಲ್ಪಿತ
ವೆಂಬ ವಿಷಘುಗ್ಗಡಕೆ ಗಾರುಡವೇನ ಮಾಡುವದು
ತುಂಬುವುದು ಬತ್ತುವುದು ಕಾಲನ
ಡೊಂಬಿದಾರಿಗೆ ಸಾಧ್ಯ ನಾವೇ
ನೆಂಬುದಿದಕೆಂದಳಲಿದರು ಭೀಷ್ಮಾದಿ ಸಜ್ಜನರು ೨೬

ಇವರ ವಂಚಿಸಿ ರಜನಿ ಮಧ್ಯದೊ
ಳವನ ಕಳುಹಿದಡಾತನೈತಂ
ದಿವರ ಪಾಳಯದೊಳಗೆ ಹೊಕ್ಕನು ಹಲವು ಪಯಣದಲಿ
ಅವನಿಪತಿ ಮರುದಿವಸ ಬೀಡೆ
ತ್ತುವ ನಿಧಾನವನರಿದು ರಾಯನ
ಭವನಿಕೆಯ ಹೊರಬಾಹೆಯಲಿ ದಂಡಿಗೆಯನವನಿಳಿದ ೨೭

ಕರೆದು ಹೇಳಿದನಾತ ಪಡಿಹಾ
ರರಿಗೆ ತಾನೈ ಪ್ರಾತಿಕಾಮಿಕ
ನರಸ ಕಳುಹಲು ಬಂದೆನಗ್ಗದ ರಾಜಕಾರಿಯಕೆ
ಧರಣಿಪಾಲಂಗರುಹಿಯೆನೆ ನೃಪ
ವರಗೆ ಬಿನ್ನಹ ಮಾಡೆ ಕರೆಸಿದ
ಡಿರದೆ ಹೊಕ್ಕನು ದೂತನಂದಾ ರಾಯನೋಲಗವ ೨೮

ದರುಶನವನಿತ್ತವನಿಪಾಲನ
ಚರಣದಲಿ ಮೈಯಿಕ್ಕಿ ನಿಂದನು
ನರ ವೃಕೋದರ ನಕುಲ ಸಹದೇವರಿಗೆ ಕೈಮುಗಿದು
ಧರಣಿಪನ ಮೊಗಸನ್ನೆಯಲಿ ಕು
ಳ್ಳಿರಲಿದೇನೈ ಪ್ರಾತಿಕಾಮಿಕ
ಬರವು ಬೇಗದೊಳಾಯ್ತೆನುತ ಬೆಸಗೊಂಡನಾ ಭೀಮ ೨೯

ಬರವು ಬೇರೇನೊಡೆಯರಟ್ಟಿದ
ರರಸನಲ್ಲಿಗೆ ಹಿಂದೆ ಜೂಜಿನೊ
ಳೊರಸೊರಸು ಮಿಗೆ ಮಸೆದುದಿತ್ತಂಡಕ್ಕೆ ಮನ ಮುನಿಸು
ಹರೆದು ಹೋಯ್ತದು ಹೃದಯ ಶುದ್ಧಿಯೊ
ಳೆರಡರಸುಗಳು ಜೂಜನಾಡಲಿ
ಮರಳಿ ಬಿಜಯಂಗೈವುದೆಂದಟ್ಟಿದನು ಧೃತರಾಷ್ಟ್ರ ೩೦

ಮರಳಿ ಕರೆಸುವುದೆಂದು ಕಂಬನಿ
ವೆರಸಿ ಕುರುಪತಿ ಪಿತನ ಚಿತ್ತವ
ಕರಗಿಸಿದನೋ ಮೇಣು ತಾ ಕರೆಸಿದಳೊ ಗಾಂಧಾರಿ
ಕರೆಸುವವದಿರು ಭಂಡರೋ ಮೇ
ಣ್ಮರಳಿ ಹೋಹರು ಭಂಡರೋ ನೀ
ನರಿವುದೇನೈ ಪ್ರಾತಿಕಾಮಿಕಯೆಂದನಾ ಭೀಮ ೩೧

ಬೊಪ್ಪನವರಟ್ಟಿದರೆ ಶಿವ ಶಿವ
ತಪ್ಪ ನೆನೆವರೆ ಭೀಮ ಸೈರಿಸು
ತಪ್ಪನಾಡಿದೆ ನಮಗೆ ಮುನಿವಳೆ ತಾಯಿ ಗಾಂಧಾರಿ
ತಪ್ಪಲೊಮ್ಮೆಗೆ ಪಾಂಡು ಕುಂತಿಗೆ
ಮುಪ್ಪಿನಲಿ ಮರುಳಾಟವಾಗಲಿ
ತಪ್ಪುವನೆ ಧೃತರಾಷ್ಟ್ರನೆಂದನು ನಗುತ ಯಮಸೂನು ೩೨

ಖಳರು ಮೊದಲಲಿ ಕೌರವರು ಕಲಿ
ಮೊಳೆಯನಂಕುರಿಸುವ ಕುವಿದ್ಯಾ
ಕಲಿತ ಮಾಯರು ಕರ್ಣ ಶಕುನಿಗಳವರ ಸಂಗದಲಿ
ತಿಳಿದು ನಡೆವವನಲ್ಲವಿದು ನಿ
ರ್ಮಲದ ನೀತಿಗೆ ಸಲ್ಲ ನಿಜ ಪಿತ
ನೊಳಗು ನಿರ್ಮಳವಿಲ್ಲವೆಂದನು ನಗುತ ಕಲಿಭೀಮ ೩೩

ನೆನಹಿನಭಿಮತವಲ್ಲ ದುರ್ಯೋ
ಧನನ ಸೌಬಲ ಕರ್ಣರಭಿಮತ
ಜನಪ ಧೃತರಾಷ್ಟ್ರನಿಗೆ ಗಾಂಧಾರಿಗೆಯಲಂಘ್ಯವಿದು
ಅನುನಯದ ಹೊತ್ತಲ್ಲ ನೀವ್ ಹ
ಸ್ತಿನಪುರಿಯ ಹೊಕ್ಕಾಗ ಘನ ಕಾ
ನನಕೆ ಗಮಿಸುವಿರೆಂದರಾ ಧೌಮ್ಯಾದಿ ಮಂತ್ರಿಗಳು ೩೪

ಕರೆಯೆ ಕಾದುವುದಾಡುವದು ಸಂ
ಗರಕೆ ಜೂಜಿಂಗಿದು ಮಹೀಶರ
ಪರಮ ಧರ್ಮವಲೇ ನಿಧಾನಿಸೆ ವೈದಿಕಾಂಗದಲಿ
ಗುರುವಲಾ ಧೃತರಾಷ್ಟ್ರನಾತನು
ಕರೆಸಿದಲ್ಲಿ ವಿಘಾತಿ ಬಂದರೆ
ಬರಲಿ ಸೈರಿಸಬಲ್ಲೆನೆಂದನು ಧರ್ಮನಂದನನು ೩೫

ಜನಪನಾಜ್ಞೆಯ ಮೀರಿ ಬಳಸುವು
ದನುಚಿತವು ನಮಗಿನ್ನು ಭೀಮಾ
ರ್ಜುನ ನಕುಲ ಸಹದೇವರಭಿಮತವೆಮ್ಮ ಮತವೆನಲು
ಮನ ಮೊದಲು ಕರಣಂಗಳಾತ್ಮಂ
ಗನುಚರರೊ ಬಾಧಕರೊ ನಿಮ್ಮಯ
ಮನಕೆ ಚಿಮ್ಮಾವುಗೆಗಳೆಂದರು ಪವನಜಾದಿಗಳು ೩೬

ಮರಳಿ ಪಾಳೆಯ ಬಿಡಲಿ ಶಿಷ್ಟರ
ಕರೆಸಿ ಪೇಳೆನುತವನಿಪತಿ ಗಜ
ಪುರಿಗೆ ತಿರುಗಿದನರಿಯನೇ ಕೌರವನ ಕೃತ್ರಿಮವ
ಕೊರಳಲಿಕ್ಕಿದ ವಿಧಿಯ ಕಣ್ಣಿಯ
ಹುರಿ ಬಲುಹಲೇ ಧರ್ಮಸುತನೊಡ
ಮುರಿಚಲಾಪನೆ ಕೇಳು ಜನಮೇಜಯ ಮಹೀಪಾಲ ೩೭

ಸುತರು ಸಚಿವರು ಮಂತ್ರಿಗಳು ನಿಜ
ಸತಿಯರಾಪ್ತರು ಬಂಧುಗಳು ಭೂ
ಪತಿಗಳನುಜರು ಬುಧರು ಚಾತುರ್ಬಲದ ನಾಯಕರು
ಮತವು ಮರಳುವದಲ್ಲ ಧರಣೀ
ಪತಿಯನುತ್ಸಾಹಿಸುವ ಗತಿ ಸಂ
ಗತವಲೇ ನವಗೆನುತ ನಡೆದುದು ಬುಧಜನಸ್ತೋಮ ೩೮

ಭರದ ಪಯಣವಲಿವರು ಹಸ್ತಿನ
ಪುರದ ಹೊರಬಾಹೆಯಲಿ ಬಿಟ್ಟರು
ಪರಿರಚಿತ ಗಜ ತುರಗ ಶಾಲೆಯ ವಿಪುಳ ವೀಥಿಯಲಿ
ಬಿರಿಯೆ ನೆಲನಳ್ಳಿರಿವ ವಾದ್ಯದ
ಮೊರೆವ ಭೇರಿಯ ಬಹಳ ಕಹಳ
ಸ್ವರದ ಕಳಕಳ ತೀವಿತಬುಜ ಭವಾಂಡ ಖರ್ಪರವ ೩೯

ಏನಿದದ್ಭುತ ರಭಸವಿದೆಲಾ
ಮಾನನಿಧಿಗಳು ಮರಳಿ ಕುಂತೀ
ಸೂನುಗಳ ಬಲ ಬಂದು ಬಿಟ್ಟುದು ಪುರದ ಬಾಹೆಯಲಿ
ಏನು ಕೌರವರೊಡನೆ ಶರ ಸಂ
ಧಾನವೋ ವಿನಯಾನುಗುಣ ಸಂ
ಧಾನವೋ ತಾನೆನುತ ಗಜಬಜಿಸಿದುದು ಗಜನಗರ ೪೦

ಪುರವ ಹೊಕ್ಕನು ನೃಪತಿ ಪರಿಮಿತ
ಪರಿಜನದಲಾ ರಾಜಬೀದಿಯ
ನೆರವಿ ನೆರವಿಯ ಜನದ ಪುನರಾಗಮನ ವಿಸ್ಮಯವ
ಪರಿಣತ ಸ್ತ್ರೀಬಾಲ ವೃದ್ಧರ
ವಿರಸ ವಚನವನಾಲಿಸುತ ನೃಪ
ನರಮನೆಗೆ ಬಂದೆರಗಿದನು ಧೃತರಾಷ್ಟ್ರನಂಘ್ರಿಯಲಿ ೪೧

ಸೋಲದಲಿ ಮನನೊಂದು ಹೋದುದು
ಹೋಲದೆಮ್ಮಭಿಮತಕೆ ನಿಮ್ಮೊಳು
ಮೇಳದಿಂದೊಂದಾಗಿ ಮಜ್ಜನ ಭೋಜನಾದಿಗಳ
ಲೀಲೆಯಲಿ ಮಾಡುವದು ಸದ್ಯೂ
ತಾಳಿಯಲಿ ರಮಿಸುವದು ಮನದ ವಿ
ಟಾಳವಿಲ್ಲದೆ ಬದುಕಿ ನಿಮ್ಮೊಳಗೆಂದನಂಧನೃಪ ೪೨

ಕೃತಕವಿಲ್ಲದೆ ಬಂದೆ ನೀನೀ
ವ್ಯತಿಕರಕೆ ಮನ ಬಹರೆ ಸುಖ ಸಂ
ಗತ ಸುಹೃದ್ದ್ಯೂತದಲಿ ರಮಿಸೈ ಕಂದ ಹೋಗೆಂದು
ಸುತತನದ ಸೌಹಾರ್ದ ಸಂಭಾ
ವಿತದ ಹೊರಬಾಹೆಯಲಿ ಧರಣೀ
ಪತಿಯನುಪಚರಿಸಿದನು ಚದುರಿಗತನದಿ ಧೃತರಾಷ್ಟ್ರ ೪೩

ಸರ್ವಲೋಕ ವಿನಾಶಕರವೀ
ಗುರ್ವಣೆಯ ದೈವಾಭಿಪಾಕಕೆ
ದರ್ವಿಯಾಯಿತು ಧರ್ಮಪುತ್ರನ ಬುದ್ಧಿ ವಿಸ್ತಾರ
ಸರ್ವಜನವೊಂದೆಸೆ ಯುಧಿಷ್ಠಿರ
ನೋರ್ವನೊಂದೆಸೆ ಶಕುನಿ ಕೌರವ
ರೀರ್ವರೊಂದೆಸೆ ಜೂಜಿನಭಿಮತವರಸ ಕೇಳೆಂದ ೪೪

ಬಂದು ಕುಳ್ಳಿರ್ದುದು ಸಭಾಸದ
ವೃಂದ ನೆರೆದುದು ಮತ್ತೆ ಜೂಜಿನ
ದಂದುಗದ ದುರ್ವ್ಯಸನ ಮುಸುಕಿತು ಧರ್ಮನಂದನನ
ತಂದು ಮಣಿಮಯ ಸಾರಿವಲಗೆಯ
ನಂದು ಮೋಹರಿಸಿದರು ಜೂಜಿಂ
ಗಿಂದುಕುಲದ ಮಹೀಶನನುವಾದನು ಸರಾಗದಲಿ ೪೫

ಎಳ್ಳನಿತು ಖಯಖೋಡಿ ಚಿತ್ತದೊ
ಳಿಲ್ಲ ನಿಜ ಪಾಂಡಿತ್ಯ ಪರಿಣತಿ
ಬಿಲ್ಲ ಬಿಸುಟುದು ಬೆದರಿಹೋಯ್ತು ವಿವೇಕವಿಸ್ತಾರ
ಖುಲ್ಲರೊಡನೆಯೆ ಖೇಳಮೇಳಕೆ
ಚಲ್ಲಣವ ವೆಂಟಣಿಸಲಾ ಜನ
ವೆಲ್ಲ ಮರುಗಿತು ಧರ್ಮಜನ ಮರುಜೂಜಿನುಬ್ಬಟೆಗೆ ೪೬

ತೆಗೆದು ಸಾರಿಯ ಹೂಡಿ ಹಾಸಂ
ಗಿಗಳ ಹೊಸೆದನು ಶಕುನಿ ಧರ್ಮಜ
ಹೊಗಳು ಹೊಣೆಯನು ವಚನಿಸೊಡ್ಡವನಿದು ವಿನೋದವಲೆ
ಬಗೆವಡೊಂದೇ ಹಲಗೆ ಮೇಲಣ
ದುಗುಣ ಸಲ್ಲದು ಜೂಜುಗಾರರ
ವಿಗಡತನವಲ್ಲೆಂದು ನೃಪತಿಗೆ ಸೂಸಿದನು ನಗೆಯ ೪೭

ಲಲಿತ ರಾಗದ ರಸದ ಗೋರಿಯ
ಬಿಲುಸವಿಯ ಮೃಗದಂತೆ ವಿಷಯದ
ಕುಳಿಯೊಳಗೆ ಕಾಲ್ದೊಡಕಿ ಬಿದ್ದ ಸುಯೋಗಿಯಂದದಲಿ
ಕಲಿತ ವಿಕಳಾವೇಶದಲಿ ವಿ
ಹ್ವಲಿತ ವಿವಿಧಶ್ರೋತ್ರ ನಯ ಸಂ
ಚಲಿತನೆಂದನು ಶಕುನಿ ನೀ ನುಡಿಯೊಡ್ಡವೇನೆಂದು ೪೮

ಧರಣಿಪತಿ ಕೇಳ್ ನಿನ್ನ ಧಾರುಣಿ
ಕುರುಪತಿಯ ನೆಲನೊಡ್ಡ ನಿಮ್ಮಾ
ಯೆರಡರಸುಗಳೊಳಾರು ಸೋತರು ಸೋತ ಭೂಪತಿಗೆ
ವರುಷ ಹನ್ನೆರಡರಲಿ ವನದೊಳ
ಗಿರವು ಮೇಣಜ್ಞಾತವೊಂದೇ
ವರುಷ ಹದಿನಾಲ್ಕರಲಿ ಹೊಗುವುದು ತಮ್ಮ ಪಟ್ಟಣವ ೪೯

ಮರೆಯಲಿಹುದಜ್ಞಾತ ವಾಸದೊ
ಳರಿದರಾದೊಡೆ ಮತ್ತೆ ವನದಲಿ
ಚರಿಸುವುದು ಹನ್ನೆರಡು ವರುಷವು ಸತ್ಯಭಾಷೆಯಲಿ
ಮುರಿದು ತಪ್ಪಿದ ನೃಪನನೀಶ್ವರ
ನರಿವನೈಸಲೆ ರಾಜಧರ್ಮವ
ಮೆರೆವರಾಡುವುದೊಡ್ಡವೀ ಪರಿಯೆಂದನಾ ಶಕುನಿ ೫೦

ಅಂಜುವರೆ ನಿಲು ಜೂಜುಗಾರರ
ಭಂಜವಣೆಗೊಳಗಹರೆ ಬಾ ನೃಪ
ರೆಂಜಲಿಸಿ ಬಿಡಬಹುದೆ ಪರಮ ದ್ಯೂತ ರಸಸುಧೆಯ
ರಂಜಕರು ನಾವಲ್ಲ ಜೂಜಿಗೆ
ಕಂಜಭವ ತಾನೆನ್ನೊಡನೆ ಕೆಲ
ರಂಜದಿಹರಾರೆಂದು ಗರುವವ ಸೂಸಿದನು ಶಕುನಿ ೫೧

ಉಗ್ರಭಾಷೆಯದೇಕೆ ಶಿವಶಿವ
ವಿಗ್ರಹ ಪ್ರತಿಮುಖದ ವಿಷಮಾ
ವಗ್ರಹದಲಿದು ಬೆಂದುಹೋಗದೆ ಭರತಸಂತಾನ
ನಿಗ್ರಹಿಸಲೇಕಕಟ ಕುರುಕುಲ
ದಗ್ರಿಯನನೆಂದಖಿಳ ಸಚಿವರು
ದಗ್ರಚರಿತರು ಮುರಿದು ನುಡಿದರು ನೀತಿವಚನದಲಿ ೫೨

ವಿದುರ ಗುರು ಗುರುಸೂನು ಬಾಹ್ಲಿಕ
ನದಿಯ ಮಗ ಗಾಂಧಾರಿ ಕುಂತೀ
ಸುದತಿ ಭೂರಿಶ್ರವ ಯುಯುತ್ಸು ವಿಕರ್ಣ ಸೃಂಜಯರು
ಇದು ವಿಷಮವೆಂದಾ ಕೃಪ ದ್ರೌ
ಪದಿ ವೃಕೋದರ ಪಾರ್ಥ ಯಮಳರು
ಕುದಿದರೊಳಗೊಳಗಾಡಲಮ್ಮದೆ ರಾಯನಿದಿರಿನಲಿ ೫೩

ಕ್ಷಿತಿಪ ಕೇಳ್ ದುರ್ವ್ಯಸನ ವಿಷಮ
ವ್ಯತಿಕರದ ಭಾಷೆಯನು ನೃಪ ಮಿಗೆ
ಪತಿಕರಿಸಿದನು ಹೊಸೆದು ಹಾಸಂಗಿಗಳ ಹಾಯ್ಕಿದನು
ಸತಿಯ ದಕ್ಷಿಣ ನಯನವೀ ಭೂ
ಪತಿಯ ವಾಮ ಭುಜಾಕ್ಷಿಗಳು ದು
ರ್ಗತಿಯ ಸೂಚಿಸಿ ತೋರುತಿರ್ದವು ಧರ್ಮನಂದನನ ೫೪

ದಾಯವೇ ಮಝು ಪೂತು ದುಗತಿಗ
ನಾಯಸವಲೇ ಚೌಕವೊಂದೇ
ಕಾಯಲಾಗದೆ ಹಾಯ್ಕು ಹಾಯ್ಕೆಂದೊದರಿ ಗರ್ಜಿಸಿದ
ರಾಯ ಸೋತನು ಧರ್ಮಸುತ ಕುರು
ರಾಯ ಗೆಲಿದನು ಕಟ್ಟು ಗುಡಿಯನು
ರಾಯನೂರೊಳಗೆಂದು ಮಿಗೆ ಬೊಬ್ಬಿರಿದನಾ ಶಕುನಿ ೫೫

ಹಣುಗಿತರಸನ ವದನ ತಾಳಿಗೆ
ಯೊಣಗಿತವನಿಗೆ ನಟ್ಟದಿಟ್ಟಿಯ
ಮಣಿದ ನೆನಹಿನ ಮುರಿದ ಮಹಿಮೆಯ ತಾಗಿದಪದೆಸೆಯ
ಜುಣುಗಿದುಬ್ಬಿನ ಸತ್ಯದಲಿ ಕೇ
ವಣಿಸಿದರಿವಿನ ವಿಕೃತ ಕರ್ಮದ
ಕುಣಿಕೆಗೊಲೆದೊಲೆದರಸನಿದ್ದನು ಹೊತ್ತ ದುಗುಡದಲಿ ೫೬

ಉಬ್ಬು ಮುರಿದುದು ತಮ್ಮೊಳೊಬ್ಬರ
ನೊಬ್ಬರೀಕ್ಷಿಸಿ ಕೈಯ್ಯಗಲ್ಲದ
ನಿಬ್ಬರದ ನಿಡುಸುಯ್ಲ ಖೋಡಿಯ ಮನದ ಕಳ್ಗುದಿಯ
ಜಬ್ಬುಲಿಯ ಜಾಣಿಕೆಯ ಚಿಂತೆಯ
ಹಬ್ಬುಗೆಯ ಹರವಸದ ಖೇದದ
ಮಬ್ಬಿನಲಿ ಹಣಗಿದರು ಪವನಜ ಫಲುಗುಣಾದಿಗಳು ೫೭

ಕಂಡನೇ ಧೃತರಾಷ್ಟ್ರನನು ಕೈ
ಕೊಂಡನೇ ವನದೀಕ್ಷೆಯನು ಪಿತ
ನಂಡಲೆದು ಕೃಷ್ಣಾಜಿನವನುಡುಗೊರೆಯನಿತ್ತನಲೆ
ಚಂಡಿಗೊಂಡರೆ ನನಗೆ ನಿನ್ನಿನ
ಭಂಡತನ ಬಾರದಲೆ ವನವಾ
ಖಂಡಲಪ್ರಸ್ಥವಲೆ ನಿನಗಿನ್ನೆಂದಳಿಂದುಮುಖಿ ೫೮

ಕಳೆದು ಬಿಸುಟರು ಮತ್ತೆ ರತ್ನಾ
ವಳಿಯ ವಿವಿಧಾಭರಣವನು ಪರಿ
ಲಲಿತ ಕೃಷ್ಣಾಜಿನವ ಹೊದೆದರು ಹಾಯ್ಕಿ ಹಚ್ಚಡವ
ನಳಿನಮುಖಿ ನಳನಳಿಪ ಮುಕ್ತಾ
ವಳಿಯುಲಂಕಾರವನುಗಿದು ಸಭೆ
ಯೊಳಗೆ ಬಿಸುಟಳು ನಿಂದಳಬಲೆ ನಿಜಾಭಿರೂಪದಲಿ ೫೯

ಸಾಲದೇ ನಿಮಗಿನ್ನು ಕೌರವ
ರೋಲಗದ ಫಲವಾಯ್ತಲಾ ವನ
ಮಾಲೆ ಕೊರಳಿಗಲ್ಲ ಚರಣಾಭರಣವಾಯಿತೆಲೆ
ಬೀಳುಕೊಳಿರೇ ಬೊಪ್ಪನವರನು
ಮೇಲೆ ಮೋಹದ ತಾಯಲಾ ನಡೆ
ಹೇಳಿ ಕಳುಹಿಸಿಕೊಂಬೆವೆಂದನು ಭೂಪತಿಗೆ ಭೀಮ ೬೦

ಬಂದರಿವರರಮನೆಗೆ ನೇಮವೆ
ಯೆಂದು ಪದಕೆರಗಿದರೆ ಕಣು ನೀ
ರಿಂದ ನನೆದನು ತಂದೆ ಮಕ್ಕಳ ಬಿಟ್ಟು ಬದುಕುವನೆ
ಇಂದುಮುಖಿ ಮರುಗಿದಳು ನಾವಿ
ನ್ನೆಂದು ಕಾಬೆವು ನಿಮ್ಮನಕಟಕ
ಟೆಂದಳತಿ ಮೋಹಿತೆಯಲಾ ಕುಂತೀ ಕುಮಾರರಿಗೆ ೬೧

ವನದೊಳತ್ಯಾಯಾಸ ನೀವೆಂ
ತನುಭವಿಸುವಿರಿ ಪಾಪಿ ದುರ್ಯೋ
ಧನನ ದುರ್ಜನ ಸಂಗ ನಿವಗಿದು ಸಿಂಗಿಯಾದುದಲೆ
ವನಿತೆ ನಿಮ್ಮೊಡನೆಂತು ತೊಳಲುವ
ಳನವರತ ಗಿರಿ ಗುಹೆಯ ಘಟ್ಟವ
ನೆನುತ ನುಡಿದಳು ಕುಟಿಲಗರ್ಭದ ಗುಣದ ಬೆಳವಿಗೆಯ ೬೨

ಬೀಳುಕೊಡಿರೇ ಸಾಕು ಬಹಳ ಕೃ
ಪಾಳುಗಳಲಾ ವಿಧಿಯ ಚಿತ್ತ ವಿ
ಟಾಳ ಗತಿಗೇನಾಯ್ತು ಹದಿಮೂರಬುದವವಧಿಯಲಿ
ಮೇಲೆ ನಿಮ್ಮಾತ್ಮಜರಿಗವನೀ
ಪಾಲನೆಯು ಪರುಟವದ ಪಟ್ಟವ
ಪಾಲಿಸುವರಿದಕೇನು ಹೊಲ್ಲೆಹವೆಂದನಾ ಧೌಮ್ಯ ೬೩

ಫಲಕುಜದ ಪಲ್ಲವದ ಪದ ಕರ
ತಳದ ವಿಪುಲ ತಮಾಲ ಪತ್ರದ
ಲಲಿತ ಕೇತಕಿ ನಖದ ದಾಡಿಮ ದಂತಪಂಗ್ತಿಗಳ
ನಳಿನ ನಯನದ ಮಧುಪ ಕುಲ ಕುಂ
ತಳದ ವನಸಿರಿ ಸವತಿಯಾದಳು
ಜಲಜಮುಖಿ ಪಾಂಚಾಲೆಗೆಂದನು ಧೌಮ್ಯಮುನಿ ನಗುತ ೬೪

ಇವರು ಕಳುಹಿಸಿಕೊಂಡರಾ ನೃಪ
ಭವನವನು ಹೊರವಂಟರೊಡನು
ತ್ಸವ ವಿಹೀನರು ವಿದುರ ಭೀಷ್ಮ ದ್ರೋಣ ಗೌತಮರು
ಅವನಿಪತಿ ದುರ್ಯೋಧನಾದಿಗ
ಳವನ ಸಹಭವರುಳಿಯೆ ಬಂದುದು
ವಿವಿಧಜನದೊತ್ತೊತ್ತೆ ಮಸಗಿತು ರಾಜಬೀದಿಯಲಿ ೬೫

ಸಂದಣಿಸಿದುದು ಕೇರಿಕೇರಿಯ
ಮಂದಿ ಮನೆಮನೆ ಮೇಲೆ ಘನತರು
ವೃಂದದಲಿ ಪುರಸದನ ಶಿಖರೌಘದಲಿ ಶೋಕಿಸುತ
ನಿಂದುದಲ್ಲಿಯದಲ್ಲಿ ನೋಟಕ
ರಿಂದ ಕೆತ್ತುದು ಬೀದಿ ಪುರಜನ
ಬಂದಿಯಲಿ ಸಿಲುಕಿದ ನೃಪಾಲರು ನಡೆದರೊಗ್ಗಿನಲಿ ೬೬

ಕುತ್ತುದಲೆಗಳ ಮೃಗದ ತೊಗಲಿನ
ಸುತ್ತು ಹೊದಕೆಗಳೆಡದ ಕೈಗಳೊ
ಳೆತ್ತಿದಾಯುಧ ತತಿಯ ಭಂಗದ ಭೂರಿ ತಾಪದಲಿ
ಹೊತ್ತುವೆದೆಗಳ ಹೊಗೆವ ಮೋರೆಯ
ಕಿತ್ತಡದ ಕಡುಗೋಪ ಸುವತೆಗ
ಳಿತ್ತಡಿಯ ತಡವಾಯ್ತು ನೃಪರೈತಂದರೊಗ್ಗಿನಲಿ ೬೭

ಮುಂದಣಾತನು ಪಾರ್ಥನಾತನ
ಹಿಂದೆ ಭೂಪತಿ ಧರ್ಮಪುತ್ರನ
ಹಿಂದೆ ಮಾದ್ರೀತನಯರಿಬ್ಬರ ಹಿಂದೆ ಪಾಂಚಾಲೆ
ಹಿಂದೆ ಕುಂತೀದೇವಿಯಾಕೆಯ
ಹಿಂದಣಾತನು ಭೀಮನೆಂದಾ
ಮಂದಿ ತೋರಿದುದೊಬ್ಬರೊಬ್ಬರಿಗಿವರನೀಕ್ಷಿಸುತ ೬೮

ಹರನ ಜೋಡು ಮುರಾಂತಕನ ಸಮ
ದೊರೆ ವಿರಿಂಚನ ಪಾಡು ಶಕ್ರನ
ಸರಿಸದವರಿಗೆ ಭಂಗವೀ ವಿಧಿಯಿಾ ವಿಪತ್ತುಗಳೆ
ನರರನೀ ಕೌರವರ ಮಿಕ್ಕಿನ
ನೊರಜುಗಳ ಪಾಡೇನು ಶಿವಶಿವ
ಕರುಣೆಯಲ್ಲ ವಿಧಾತ್ರನೆಂದುದು ನೆರೆದ ಜನನಿಕರ ೬೯

ಕೇಳಿದಭಿಮನ್ಯು ಪ್ರಮುಖ ಭೂ
ಪಾಲ ತನುಜರು ಸಚಿವರಾಪ್ತರು
ಪಾಳೆಯದ ತಲ್ಲಣದ ಖಯಖೋಡಿಯ ಮನೋವ್ಯಥೆಯ
ಹೇಳಲರಿಯೆನು ಬಂದು ಕಂಡರು
ಗೋಳಿಡುತ ಪದಕೆರಗಿದರು ನೃಪ
ನಾಲಿ ನೀರೇರಿದುವು ನನೆದರು ನಯನವಾರಿಯಲಿ ೭೦

ಕರೆಸಿದನು ಪರಿವಾರವನು ನಿಮ
ಗರಸು ಕೌರವನೆಮ್ಮ ಗಜ ರಥ
ತುರಗ ಕೊಟ್ಟಿಗೆಯೆತ್ತು ಭಂಡಿ ಕೊಟಾರ ಕೊಪ್ಪರಿಗೆ
ಸರಕು ಸರ್ವಸ್ವಗಳು ಕೌರವ
ನರಮನೆಗೆ ನಡೆಯಲಿ ವನಾಂತದೊ
ಳಿರವು ನಮಗೆಂದರುಹಿದನು ಸಚಿವರಿಗೆ ಸಹದೇವ ೭೧

ಕರಿಗಳನು ಕೌರವನ ಮಾವಂ
ತರಿಗೆ ಕೈಗೊಳಿಸಿದರು ರಥಹಯ
ತುರುಗಳುಂ ಕೈವರ್ತಿಸಿತು ಸೂತರಿಗೆ ಗೋವರಿಗೆ
ಸರಕನವನಿಪನನುಚರರಿಗು
ತ್ತರಿಸಿದರು ಪಾರಕವನೊಪ್ಪಿಸಿ
ವರ ಸುಭಟರಳವಡಿಸಿಕೊಂಡರು ಕಾನನೋಚಿತವ ೭೨

ಹರಿದರಿಂದ್ರಪ್ರಸ್ಥಕಾತನ
ಚರರು ಸಚಿವರು ಹೊಕ್ಕು ಪಾಂಡವ
ರರಮನೆಯ ಮುದ್ರಿಸಿದರಲ್ಲಿಯ ನಾಡು ಬೀಡುಗಳ
ಕರೆಸಿ ಕಾಣಿಕೆಗೊಂಡು ಠಾಣಾಂ
ತರದ ನಾಯಕವಾಡಿಗಳ ಸಂ
ವರಣೆಗಳ ಸಂತವಿಸಿದರು ಕುರುರಾಜ ಮುದ್ರೆಯಲಿ ೭೩

ಅರಸ ಕೇಳಾಶ್ಚರ್ಯವನು ಗಜ
ಪುರದ ಬೀದಿಯೊಳಿವರು ಬರುತಿರೆ
ದುರುಳ ದುಶ್ಯಾಸನನು ಮಿಗೆ ಹರಿತಂದನೇಡಿಸುತ
ಬೆರಲನಾಡಿಸಿ ಹೋದರೀ ಹೋ
ದರಸು ಕಾನನದೆತ್ತು ಪುನರಪಿ
ಸರಿದವೆತ್ತುಗಳೆನುತ ಬಂದನು ಹಿಂದೆ ಪವನಜನ ೭೪

ತಿರುಗಿ ಕಂಡನು ಭೀಮನುಬ್ಬಿದ
ಹರುಷಹೃದಯನ ಮನದ ರೋಷದೊ
ಳರಸನನು ನೋಡಿದನು ಭೂಪತಿ ಮೊಗದ ಸನ್ನೆಯಲಿ
ತಿರುಹಿದನು ತಮ್ಮನನು ಗದೆಯನು
ತಿರುಗಿ ಹಾಯಿಕಿ ಹಿಡಿದು ಮಾರುತಿ
ಯರಸನಾಜ್ಞೆಯೊಳಂಜಿ ನಡೆದನು ನೃಪತಿ ಕೇಳೆಂದ ೭೫

ಪುರವ ಹೊರವಂಟಿವರು ಗಂಗಾ
ವರನದಿಯ ತೀರದಲಿ ನಿಂದರು
ಪರಿಜನವ ಕಳುಹಿದರು ಧೃತರಾಷ್ಟ್ರನ ಪಸಾಯಿತರ
ಗುರುಜನಕೆ ಪೊಡವಂಟು ಬೀಳ್ಕೊಂ
ಡರು ನದೀಜ ದ್ರೋಣ ಕೃಪರನು
ಕರೆದು ಕುಂತಿಯ ನಿಲಿಸಿದರು ವಿದುರನ ನಿವಾಸದಲಿ ೭೬

ಕಳುಹಿ ಮರಳಿದು ವಿದುರನರಸನ
ನಿಲಯಕೈತಂದನು ಕುಮಾರರ
ಕಳುಹಿ ಬಂದ್ಯೆ ತಮ್ಮ ಮತವೇನಾ ಯುಧಿಷ್ಠಿರನ
ಉಳಿದವರ ಹದನೇನು ದುರುಪದಿ
ಲಲನೆಯೇನೆಂದಳು ನಿದಾನವ
ತಿಳಿದು ಬಂದ್ಯೆ ಹೇಳೆನುತ ಧೃತರಾಷ್ಟ್ರ ಬೆಸಗೊಂಡ ೭೭

ಮುನಿಪ ಜಪಿಸುತ ಹೋದನಗ್ನಿಯ
ವಿನುತ ಸೂಕ್ತವನೆತ್ತು ಗೈದುವಿ
ನನಿಲಜನು ದುಗುಡದಲಿ ಫಲುಗುಣ ಯಮಳರೊಂದಾಗಿ
ವನಿತೆಯನು ನಡುವಿಟ್ಟು ಹೊರವಂ
ಟನು ಯುಧಿಷ್ಠಿರ ನೃಪತಿ ನಿಯತದಿ
ನೆನೆವುತಿದ್ದನು ವೀರನಾರಾಯಣನ ಪದಯುಗವ ೭೮

ಇತಿ ಶ್ರೀಮದಚಿಂತ್ಯ ಮಹಿಮ ಗದುಗು ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪುಷ್ಟವಚಃ ಷಟ್ಪದೀ ನಿಕಾಯ
ಶ್ರೀಮತ್ಕುಮಾರವ್ಯಾಸ ಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಸಭಾಪರ್ವ ಸಮಾಪ್ತಮಾದುದು.

ಅರಣ್ಯಪರ್ವ

ಮೊದಲನೆಯ ಸಂಧಿ

ಸೂ. ಸಕಲ ರಾಜ್ಯವನುಳಿದಿವರು ಕಾ
ಮ್ಯಕ ಮಹಾವನದೊಳಗೆ ಕೀ
ಚಕ ಕುಲಾಂತಕ ಕೆಡಹಿದನು ಕಿಮ್ಮೀರ ದಾನವನ

ಕೇಳು ಜನಮೇಜಯ ಧರಿತ್ರೀ
ಪಾಲ ಗಂಗಾತೀರದಲಿ ಭೂ
ಪಾಲಕರು ಗುರು ಭೀಷ್ಮ ವಿದುರಾದ್ಯಖಿಳ ಬಾಂಧವರ
ಬೀಳುಗೊಟ್ಟರು ಗಜಪುರದ ಜನ
ಜಾಲವನು ಕಳುಹಿದರು ಗಂಗಾ
ಕೂಲದುತ್ತರ ಭಾಗದಲಿ ಮಾಡಿದರು ವಿಕ್ರಮವ ೧

ನಿಲಿಸೆ ನಿಲ್ಲದೆ ಬಂದರರಸನ
ಬಳಿಯಲಗ್ಗದ ಮಂಡಲೇಶ್ವರ
ರೊಲಿದು ಸಾಕಿದ ರಾಜಪುತ್ರರು ಹಲವು ಮನ್ನಣೆಯ
ಬಲುಭಟರು ಬಾಹತ್ತರದ ನಿ
ಶ್ಚಲ ನಿಯೋಗಿಗಳಾಶ್ರಮಿಗಳ
ಗ್ಗಳೆಯ ವಿಪ್ರಸ್ತೋಮ ಬಂದುದು ಕೋಟಿಸಂಖ್ಯೆಯಲಿ ೨

ತಿರುಗಿ ಕಂಡನು ಭೂಮಿ ಭಾರದ
ನೆರವಿಯನು ಗಲ್ಲದಲಿ ಕರವಿ
ಟ್ಟರಸ ತಲೆದೂಗಿದನು ಸುಯ್ದನು ಬೈದು ದುಷ್ಕೃತವ
ಧರಣಿ ಸೇರಿದುದಹಿತರಿಗೆ ಕರಿ
ತುರಗ ರಥವೆಮಗಿಲ್ಲ ವಿಪಿನದ
ಪರಿಭವಣೆಗಿವರೇಕೆ ಬೆಸಗೊಳು ಭೀಮ ನೀನೆಂದ ೩

ನಿಲ್ಲಿರೈ ದ್ವಿಜನಿಕರ ಕಳುಹಿಸಿ
ಕೊಳ್ಳಿರೈ ಪುರವರ್ಗ ನೇಮವ
ಕೊಳ್ಳಿರೈ ಪರಿವಾರ ಮಕ್ಕಳತಂದೆ ಮೊದಲಾಗಿ
ಎಲ್ಲಿ ಮೆಳೆ ಮರಗಾಡು ಪಲ್ಲವ
ಫುಲ್ಲಫಲ ಪಾನೀಯ ಪೂರಿತ
ವಲ್ಲಿ ರಾಯನ ಸೆಜ್ಜೆಯರಮನೆಯೆಂದನಾ ಭೀಮ ೪

ಅವನಿಪತಿ ಚಿತ್ತವಿಸು ಬಹಳಾ
ರ್ಣವವ ಹೊಗು ಹಿಮಗಿರಿಯಲಿರು ಭೂ
ವಿವರ ಗತಿಯಲಿ ಗಮಿಸು ಗಾಹಿಸು ಗಹನ ಗಹ್ವರವ
ಎವಗೆ ನಿ ನೇ ಜೀವ ನೀನೇ
ವಿವಿಧ ಧನ ಗತಿ ನೀನೇ ಮತಿ ನೀ
ನವಗಡಿಸಬೇಡಕಟ ಕ ಪೆ ಮಾಡೆಂದುದಖಿಳಜನ ೫

ತುಂಬಿದನು ಕಂಬನಿಯನಕಟ ವಿ
ಡಂಬಿಸಿತೆ ವಿಧಿಯೆನ್ನನಿನಿಬರ
ನಂಬಿಸುವ ಪರಿಯೆಂತು ವಸನ ಗ್ರಾಸವಾಸದಲಿ
ತುಂಬಿ ಸಿರಿಗೆಡಹಿಯೊಳ ಲಕುಮಿಯ
ಮುಂಬಿಗನೊಳಪದೆಸೆಯ ಕುಂತದ
ಚುಂಬಿಗನೊಳೇನುಂಟು ಫಲವೆಂದರಸ ಬಿಸುಸುಯ್ದ ೬

ಖೇದವೇಕೆಲೆ ನೃಪತಿ ಹರುಷ ವಿ
ಷಾದದಲಿ ಸುಖ ದುಃಖದಲಿ ನುತಿ
ವಾದ ಪರಿವಾದದಲಿ ಸಮಬುದ್ಧಿಗಳಲಾ ದ್ವಿಜರು
ಈ ದುರಂತದ ಚಿಂತೆ ಬೇಡೆಲೆ
ದ್ವಾದಶಾತ್ಮನ ಭಜಿಸಿದರೆ ಭ
ಕ್ಷ್ಯಾದಿ ಬಹುವಿಧದನ್ನ ಸಿದ್ಧಿಪುದೆಂದನಾ ಧೌಮ್ಯ ೭

ಧರಣಿಪತಿ ಕೇಳ್ ಧೌಮ್ಯ ವಚನಾಂ
ತರದೊಳಮರನದೀ ವಿಗಾಹನ
ಪರಮಪಾವನ ಕರಣನೀಕ್ಷಿಸಿ ತರಣಿಮಂಡಲವ
ಮುರುಹಿ ಮೂಲಾಧಾರ ಪವನನ
ನುರು ಸುಷುಮ್ನೆಗೆ ನೆಗಹಿ ನಿಚ್ಚಟ
ವರ ಸಮಾಧಿಯಲಿನನ ಮೆಚ್ಚಿಸಿದನು ಮಹೀಪಾಲ ೮

ವರವ ಕೊಟ್ಟೆನು ನಿನಗೆ ಹೇಮದ
ಚರುಕವಿದೆ ವಿವಿಧಾನ್ನ ಪಾನೋ
ತ್ಕರದ ತವನಿಧಿ ನಿನ್ನ ವಧು ಬಾಣಸನ ಕರಣದಲಿ
ವಿರಚಿಸಲಿ ಬಳಿಕುಣಲಿ ಶತ ಸಾ
ವಿರವನಂತವು ನೀವು ಬಳಿಕಂ
ಬುರುಹಮುಖಿ ಮರುದಿವಸವೀ ಪರಿಯೆಂದನಾ ದ್ಯುಮಣಿ ೯

ಭೂಮಿಪತಿ ಭುಲ್ಲವಿಸಿದನು ನಿ
ಸ್ಸೀಮ ಸಂತೋಷದಲಿ ಸುಜನ
ಸ್ತೋಮ ರಕ್ಷಣಕಾದ ನಿರ್ವಾಹದ ನಿರೂಢಿಯಲಿ
ಆ ಮುನೀಂದ್ರಂಗೆರಗಿ ಬಳಿಕೀ
ಭಾಮಿನಿಯ ಕರೆದೀ ಹದನ ಸು
ಪ್ರೇಮದಿಂದರುಹಿದನು ತನ್ನ ಸಹೋದರವ್ರಜಕೆ ೧೦

ಇವರು ತಿರುಗಿದರಿತ್ತಲಡವಿಯ
ಭವಣೆಗೆಯು ಭಾರಾಂಕ ಭಾಷೆಯ
ಲವಿರಳಿತ ಜನಜಾಲ ಸಹಿತಾರಣ್ಯ ಮಾರ್ಗದಲಿ
ಅವನಿಪತಿ ಕೇಳತ್ತಲಾ ಕೌ
ರವನ ನಗರಿಗೆ ಪಾರಿಕಾಂಕ್ಷಿ
ಪ್ರವರನೊಬ್ಬನು ಬಂದು ಹೊಕ್ಕನು ರಾಜಮಂದಿರವ ೧೧

ಮುನಿಯ ಸತ್ಕರಿಸಿದನು ಕೌರವ
ಜನಪನಾ ಋಷಿಮುಖ್ಯನೀತನ
ವಿನಯ ರಚನೆಗೆ ಮೆಚ್ಚಿ ನುಡಿದನು ರಾಜಕಾರಿಯವ
ನಿನಗದೊಂದೇ ಕೊರತೆ ಪಾಂಡವ
ಜನಪರನು ಜೂಜಿನಲಿ ಸೋಲಿಸಿ
ಕನಲಿಸಿದೆಯದರಿಂದ ಬಲುಗೇಡಹುದು ನಿನಗೆಂದ ೧೨

ಹೋದ ಕೃಶಿಯಂತಿರಲಿ ಸಾಕಿ
ನ್ನಾದರೆಯು ಕೌಂತೇಯರನು ಕರೆ
ದಾದರಸಿ ಕೊಡು ಧರೆಯನೆನೆ ಖೊಪ್ಪರಿಸಿ ಖಾತಿಯಲಿ
ಹೊಯ್ದು ತೊಡೆಯನು ಹಗೆಗೆ ಕೊಡುವೆನೆ
ಮೇದಿನಿಯನೆನೆ ರೋಷ ಶಿಖಿಯಲಿ
ಕಾದುದೀತನ ಹೃದಯ ಶಪಿಸಿದನಂದು ಮೈತ್ರೇಯ ೧೩

ತೊಡೆಗಳನು ಕಲಿಭೀಮ ಬವರದೊ
ಳುಡಿದು ಕೆಡಹಲಿಯೆಂದು ಶಾಪವ
ಕೊಡಲು ಮುನಿಪನ ಸಂತವಿಟ್ಟನು ಬಂದು ಧೃತರಾಷ್ಟ್ರ
ತೊಡೆಗೆ ಬಂದುದು ತೋಟಿ ಸಾಕಿ
ನ್ನೊಡಬಡಿಸಿ ಫಲವಿಲ್ಲ ನಮ್ಮಯ
ನುಡಿಗೆ ಮರುಮಾತಿಲ್ಲೆನುತ ಮುನಿ ಸರಿದನಾಶ್ರಮಕೆ ೧೪

ಆ ಮಹಾಮುನಿ ಶಾಪ ಭಯವನು
ಭೀಮಸೇನನ ಬಲುಹ ನೆನೆ ನೆನೆ
ದಾ ಮನಸ್ಸಿನ ಬೇಗೆಯಲಿ ಬೆದೆಬೆಂದು ಬೇಸರಲಿ
ಭೂಮಿಪತಿ ಕರೆಸಿದನು ವಿದುರನ
ನಾ ಮಹಾಜ್ಞಾನಿಯನು ಮುನಿಪನ
ತಾಮಸವನರುಹಿದೊಡೆ ಬಳಿಕಿಂತೆಂದನಾ ವಿದುರ ೧೫

ತಪ್ಪದಿದು ನಿನ್ನಾತಗಳ ಭುಜ
ದರ್ಪ ತೀವ್ರ ಜ್ವರದ ವಿಕಳರ
ನೊಪ್ಪಿತಾದೆ ಸುಯೋಧನಾದ್ಯರು ಜನಿಸಲೀ ಧರೆಗೆ
ತಪ್ಪುವುದೆ ಋಷಿವಾಕ್ಯ ಸಂಧಿಯೊ
ಳಪ್ಪಿಗೊಳು ಪಾಂಡವರನಲ್ಲದ
ರಪ್ಪಿಕೊಂಬಳು ಮೃತ್ಯು ನಿನ್ನನು ಕುಮಾರಕರನೆಂದ ೧೬

ಎನಲು ಕಿಡಿಕಿಡಿಯೋಗಿ ಕೌರವ
ಜನಪನೀತನ ಬೈದು ಕುಂತೀ
ತನುಜರಲಿ ಬಾಂಧವನಲಾ ಹೋಗವರ ಹೊರೆಗೆಂದು
ಮುನಿದು ಗರ್ಜಿಸೆ ಜೀಯ ಕರ ಲೇ
ಸೆನುತ ಮನದುಬ್ಬಿನಲಿ ಪಾಂಡವ
ಜನಪರಿಹ ಕಾಮ್ಯಕ ವನಾಂತರಕೈದಿದನು ವಿದುರ ೧೭

ಇದಿರುಗೊಂಡರು ಹಿರಿದು ಮನ್ನಿಸಿ
ವಿದುರನನು ಕೊಂಡಾಡಿ ಗುರು ನೃಪ
ನದಿಜ ಧೃತರಾಷ್ಟ್ರಾದಿಗಳ ಸುಕ್ಷೇಮ ಕುಶಲಗಳ
ವಿದುರನಾಗಮನ ಪ್ರಪಂಚದ
ಹದನನೆಲ್ಲವ ಕೇಳಿದರು ಹೇ
ಳಿದನು ನಿಜ ವೃತ್ತಾಂತವನು ವಿದುರಂಗೆ ಯಮಸೂನು ೧೮

ಇತ್ತಲೀ ವಿದುರನ ವಿಯೋಗದ
ಚಿತ್ತದಂತಸ್ತಾಪದಲಿ ನೃಪ
ಮತ್ತೆ ದೂತರ ಕಳುಹಿ ಕರೆಸಿದನಾತನನು ಪುರಕೆ
ಹೆತ್ತಮಕ್ಕಳ ಬಿಡು ಪೃಥಾಸುತ
ರತ್ತ ತಿರುಗೆನೆ ಖಾತಿಗೊಂಡೆನು
ಮತ್ತೆ ಮುನಿಯದಿರೆಂದು ವಿದುರನನಪ್ಪಿದನು ನೃಪತಿ ೧೯

ಆವ ವನದಲಿ ಪಾಂಡುಸುತರಿಗೆ
ತಾವು ನಿನಗೇನೆಂದರನಿಬರ
ನಾವ ವನದಲಿ ಕಂಡೆ ಕೂಡೆನಿತುಂಟು ಪರಿವಾರ
ಆವುದಭಿಮತ ಭೀಮಸೇನನ
ಭಾವವೇನು ಯುಧಿಷ್ಠಿರಾರ್ಜುನ
ರಾವ ಭಂಗಿಯಲಿದ್ದರೆಂದನು ನಗುತ ಧೃತರಾಷ್ಟ್ರ ೨೦

ಅರಸ ಕೇಳ್ ಗಂಗಾ ನದಿಯನು
ತ್ತರಿಸಿದವರಿಗೆ ಕಮಲಮಿತ್ರನ
ಕರುಣವಾಯಿತು ಕನಕ ಪಾತ್ರೆಯೊಳಕ್ಷಯಾನ್ನದಲಿ
ಪರಿಕರದ ಪರುಟವಣೆಯಲಿ ಸಾ
ವಿರದ ಶತಸಂಖ್ಯಾತ ಧರಣೀ
ಸುರ ನಿಯೋಗಿಗಳಾಪ್ತಜನ ಸಹಿತೈದಿದರು ವನವ ೨೧

ಜನಪ ಕೇಳ್ ಕಿಮ್ಮೀರನೆಂಬವ
ನನಿಮಿಷರಿಗುಬ್ಬಸದ ಖಳನಾ
ತನ ವಿಭಾಡಿಸಿ ಹೊಕ್ಕರವರಾರಣ್ಯ ಮಂದಿರವ
ದನುಜನೇ ಕಿಮ್ಮೀರನಾತನ
ನನಿಲಜನೊ ಫಲುಗುಣನೊ ಕೊಂದಾ
ತನು ಯುಧಿಷ್ಠಿರನೋ ಸವಿಸ್ತರವಾಗಿ ಹೇಳೆಂದ ೨೨

ಅರಸ ಕೇಳಂದೇಕ ಚಕ್ರದೊ
ಳೊರೆಸಿದನಲಾ ಭೀಮನಾತಗೆ
ಹಿರಿಯನೀ ಕಿಮ್ಮೀರ ಬಾಂಧವನಾ ಹಿಡಿಂಬಕಗೆ
ಧರಣಿಪಾಲನ ಸಪರಿವಾರದ
ಬರವ ಕಂಡನು ತನ್ನ ತಮ್ಮನ
ಹರಿಬವನು ಮರಳಿಚುವೆನೆನುತಿದಿರಾದನಮರಾರಿ ೨೩

ಇವರು ಮೂರೇ ದಿನಕೆ ಕಾಮ್ಯಕ
ವನ ಮಹಾಶ್ರಮಕಾಗಿ ಬರೆ ದಾ
ನವನು ದಾರಿಯ ಕಟ್ಟಿ ನಿಂದನು ಕೈಯ ಮುಷ್ಟಿಯಲಿ
ಅವನ ಕಂಗಳ ಕೆಂಪಿನಲಿ ಮೇ
ಣವನ ದಾಡೆಯ ಬೆಳಗಿನಲಿ ಖಳ
ನವಯವವ ಕಂಡಳುಕಿ ನಿಂದರು ಮುಂಗುಡಿಯ ಭಟರು ೨೪

ಮುಂದೆ ಘೋರಾರಣ್ಯವಿದೆ ಸುರ
ಬಂದಿಕಾರನ ಕಾಹಿನಲಿ ಕಾ
ಳಿಂದಿಯುಂದರದ ಮೊಬ್ಬಿನಂತಿದೆ ತೀವ್ರತರ ತಿಮಿರ
ಇಂದಿನಿರುಳಲಿ ಬದುಕಿದೊಡೆ ಸಾ
ವೆಂದಿಗೆಮಗಿಲ್ಲೆನುತ ಭಯದಲಿ
ನಿಂದುದಲ್ಲಿಯದಲ್ಲಿ ಪಾಂಡುಕುಮಾರ ಪರಿವಾರ ೨೫

ಅಡಿಗಡಿಗೆ ಮಾನಿಸರ ಸೊಗಡವ
ಗಡಿಸುತಿದೆ ಬರಹೇಳು ನೆತ್ತರ
ಗುಡಿಹಿಗ್ಗೆನೆಯರೆಲ್ಲಿ ಶಾಕಿನಿ ಡಾಕಿನೀ ನಿಕರ
ತಡೆಯಬೇಡೋ ತಿನ್ನೆನುತ ಬೊ
ಬ್ಬಿಡುತ ಖಳನುರುಬಿದನು ರಾಯನ
ಮಡದಿ ಹೊಕ್ಕಳು ಮರೆಯನರ್ಜುನ ಭೀಮ ಧರ್ಮಜರ ೨೬

ಎಲೆಲೆ ರಾಕ್ಷಸ ಭೀತಿ ಹೋಗದೆ
ನಿಲು ನಿಲೆಲವೋ ನಿಮಿಷ ಮಾತ್ರಕೆ
ಗೆಲುವರರಸುಗಳೆನುತ ಮುನಿ ರಕ್ಷೋಘ್ನ ಸೂಕ್ತವನು
ಹಲವು ವಿಧದಲಿ ಜಪಿಸಿ ದಿಗು ಮಂ
ಡಲದ ಬಂಧವ ರಚಿಸಿ ಜನ ಸಂ
ಕುಲವ ಸಂತೈಸಿದನು ಧೌಮ್ಯನು ಮುಂದೆ ಭೂಪತಿಯ ೨೭

ಆರು ನೀವ್ ನಡುವಿರುಳು ಪಾಂಡು ಕು
ಮಾರರಾವೆನಲಿತ್ತಲೇನು ವಿ
ಚಾರ ಬಂದಿರಿ ಹೇಳಿ ನೀವಾ ಬಕ ಹಿಡಿಂಬಕರ
ವೆ ರಿಗಳಲಾ ಹೊಲ್ಲೆಹೇನು ವಿ
ಕಾರಿಗಳನೊಡಹೊಯ್ದು ಶೋಣಿತ
ವಾರಿಯೋಕುಳಿಯಾಡ ಬೇಹುದೆನುತ್ತ ಖಳ ಜರೆದ ೨೮

ಮಿಡಿದನರ್ಜುನ ಧನುವನಾತನ
ಜಡಿದು ನಿಂದನು ಭೀಮನಸುರನ
ಕೆಡಹಿ ಕಾಮ್ಯಕ ವನದ ಭೂಮಿಯ ಭೂತ ಸಂತತಿಗೆ
ಬಡಿಸುವೆನು ನೀ ಸೈರಿಸೆನುತವ
ಗಡಿಸಿದನು ಕಲಿ ಭೀಮನಂತ್ಯದ
ಸಿಡಿಲು ಸೆರೆ ಬಿಟ್ಟಂತೆ ಬೊಬ್ಬಿಡುತೆದ್ದನಮರಾರಿ ೨೯

ಎಂಬೆನೇನನು ಪವನಜನ ಕೈ
ಕೊಂಬ ದೈತ್ಯನೆ ಹೆಮ್ಮರನ ಹೆ
ಗ್ಗೊಂಬ ಮುರಿದನು ಸವರಿದನು ಶಾಖೋಪಶಾಖೆಗಳ
ತಿಂಬೆನಿವನನು ತಂದು ತನ್ನ ಹಿ
ಡಿಂಬಕನ ಹಗೆ ಸಿಲುಕಿತೇ ತಾ
ನಂಬಿದುದು ನೆರೆ ದೈವವೆನುತಿದಿರಾದನಮರಾರಿ ೩೦

ಹೊಯಿದನವನುರವಣಿಸಿ ಮುರಿದೊಳ
ಹೊಯಿದು ಹೊಕ್ಕನು ಭೀಮನೆಲವೋ
ಕಯಿದು ಮರನೇ ಸೆಳೆಗೆ ಸೆಡೆವುದೆ ಭದ್ರಮದದಂತಿ
ಕಯಿದುವಿಲ್ಲಾ ತರಿಸಿಕೊಡುವೆನ
ಡಾಯುಧವ ಬಿಡು ಸರಳನೆನುತವ
ಹೊಯಿದು ಹುರಿಯೋ ಹುರಿಯೆನುತ ಗಹಗಹಿಸಿದನು ಭೀಮ ೩೧

ಮುರುಕಿಸುವ ಪವನಜನ ನೆತ್ತಿಯ
ನೆರಗಿದನು ಬಳಿಕವನ ಹೊಯ್ಲಿನ
ಬಿರುಸಿನಯ್ಯನೊ ಸಿಡಿಲ ಶಿಷ್ಯನೊ ವಜ್ರಕರ ಹತಿಯೊ
ಕರಗಿದಾ ಮಯಣಾಮದಿಗಳಿಂ
ದೆರದ ಕಾಹಿನ ಕರುವೆನಲು ಕು
ಕ್ಕುರಿಸಲಸುರನನಿಕ್ಕಿದನು ಚಾಪಲ ಚಪೇಟದಲಿ ೩೨

ಡೆಂಡಣಿಸಿ ಸುರವೈರಿ ಧೊಪ್ಪನೆ
ದಿಂಡುಗೆಡೆದನು ನೀಲಶೈಲದ
ದಂಡಿಗಾರನ ದೇಹ ಗರ್ತದ ರಕ್ತನಿರ್ಜರದ
ದೊಂಡೆಗರುಳಿನ ಬಾಯ ಜೊಲಿನ
ಕುಂಡಲಿತ ಕರ ಜಂಘೆಗಳ ಬಿಡು
ಮಂಡೆಗೆದರಿದ ಖಳನ ಕಂಡುದು ಭೂಸುರವ್ರಾತ ೩೩

ಅರಸ ಹೇಳುವುದೇನು ಹೋರಿದ
ನರೆಗಳಿಗೆ ಕೊಂಡಾಡಿ ಬಳಿಕಿ
ಟ್ಟೊರೆಸಿ ಹುಡಿಯಲಿ ಹೂಳಿದನು ಕಿಮ್ಮೀರ ದಾನವನ
ಬೆರೆಸಿತೀ ವಿಪ್ರೌಘವೀ ಮುನಿ
ವರಿಯರೀ ಕಾಮಿನಿಯರೀ ನೃಪ
ವರನ ಪರಿಕರವಾ ಮಹಾಕಾಮ್ಯಕ ವನಾಂತರವ ೩೪

ತಳಿರು ಬಿಟ್ಟುದು ಕೂಡೆ ಹರಹಿನ
ಹಳುವದೊಳ್ ದ್ವಿಜವರ್ಗ ರಚಿಸಿದ
ತಳಿರ ಗುಡಿಗಳ ಪರ್ಣಶಾಲೆಯ ಭದ್ರಭವನಿಕೆಯ
ಮೆಳೆಯ ಮಂಟಪ ಹೊದರುದುರುಗಲು
ನೆಳಲ ಚೌಕಿಗೆ ವಿಪುಳ ವಟ ಸಂ
ಕುಲದೊಳೋಲಗ ಶಾಲೆ ಮೆರೆದುದು ಧರ್ಮನಂದನನ ೩೫

ಆ ಸಕಲ ಸಾಮ್ರಾಜ್ಯಲಕ್ಷ್ಮೀ ವಿ
ಳಾಸದರಮನೆಗಳನು ಮರೆಸಿದು
ದೀ ಶರಭ ಶಾರ್ದೂಲ ಸೇವಿತ ಘೋರ ಕಾಂತಾರ
ಆ ಸುಧಾಕಲಿತಾನ್ನವೇ ಫಲ
ರಾಸಿಯಾದುದು ಗೇಯರಸ ವಿ
ನ್ಯಾಸವೇ ಮಧು ಮಕ್ಷಿಕವ್ರಜ ಜಂಬುಕಧ್ವಾನ ೩೬

ದಿನಪ ಕೃಪೆ ಮಾಡಿದನಲೇ ಕಾಂ
ಚನಮಯದ ಭಾಂಡವನು ಬಳಿಕಾ
ವನಜಮುಖಿ ಮಾಡಿದ ಸುಪಾಕದ ಷಡುರಸಾನ್ನದಲಿ
ಮುನಿಜನಕೆ ಪರಿಜನಕೆ ಭೂಸುರ
ಜನಕೆ ತುಷ್ಟಿಯ ಮಾಡಿ ಭೂಪತಿ
ವನದೊಳಿದ್ದನು ವೀರ ನಾರಾಯಣನ ಕರುಣದಲಿ ೩೭

ಎರಡನೆಯ ಸಂಧಿ

ಸೂ. ಸಕಲ ಯದುಬಲ ಸಹಿತ ಭಕ್ತ
ಪ್ರಕರ ಪಾಲಕನೊಲವಿನಲಿ ಕಾ
ಮ್ಯಕ ಮಹಾಕಾನನಕೆ ಬಿಜಯಂಗೈದನಸುರಾರಿ

ಅರಸ ಕೇಳೈ ದ್ವಾರಕಾಪುರ
ವರಕೆ ಬಂದುದು ವಾರ್ತೆ ಪೀತಾಂ
ಬರನ ಬಹಳಾಸ್ಥಾನದಲಿ ವರ್ತಿಸಿದುದಡಿಗಡಿಗೆ
ಧರೆಸಹಿತ ನಿಜವಸ್ತು ವಾಹನ
ಪರಮವಿಭವವ ಬಿಸುಟು ಭಾರಿಯ
ಪರಿಭವದಿ ನಟ್ಟಡವಿಯೊಕ್ಕರು ಪಾಂಡುಸುತರೆಂದು ೧

ಕೇಳಿ ತಲೆದೂಗಿದನು ಮೂಗಿನ
ಮೇಲುವೆರಳಿನ ಹೊತ್ತ ದುಗುಡದ
ತೂಳಿದುಬ್ಬೆಯ ನಟ್ಟನೋಟದ ನೆಗ್ಗಿದುತ್ಸವದ
ಹೂಳಿದೂಹೆಯ ಹಿಳಿದ ನೆಗಹಿನ
ಹೇಳಲರಿದೆನೆ ಹುದಿದ ಭಾವದ
ಲಾಲಿಸಿದನಸುರಾರಿ ದೂತವ್ರಜದ ಬಿನ್ನಪವ ೨

ಅಕಟ ಕಪಟ ದ್ಯೂತದಲಿ ನೃಪ
ಮಂಕುರನುನ್ನತಿ ಮುರಿದುದೇ ಕೌ
ಳಿಕದಲೀ ಕೌರವರು ಕೊಂಡರೆ ಧರ್ಮಜನ ನೆಲನ
ಅಕುಟಿಲರಿಗೇಕಿದು ನಿರಾಬಾ
ಧಕರಿಗೇಕಿದು ಸಕಲ ಸುಜನ
ಪ್ರಕರ ವಂದ್ಯರಿಗೇಕೆನುತ್ತಸುರಾರಿ ಚಿಂತಿಸಿದ ೩

ಹಿರಿದು ಹರಿ ಚಿಂತಿಸಿದನೀ ವ್ಯಥಿ
ಕರವನರಿಯದ ಮುಗುದರಿದನಾ
ರರಿವರೈ ವಿಶ್ವಂಭರಾ ಭಾರಾಪರೋದನಕೆ
ಧರಣಿಯಲಿ ಮೈಗೊಂಡು ದೈತ್ಯರ
ನೊರಸಿದನು ಬಳಿಕುಳಿದ ಪಾಂಡವ
ಕುರುನೃಪರ ಕದಡಿಸಿದನೆಲೆ ಭೂಪಾಲ ಕೇಳೆಂದ ೪

ಏನನೆಂಬೆನು ಜೀಯ ಕಡು ದು
ಮ್ಮಾನದಲಿ ಹೊರವಂಟು ಬಂದನು
ದಾನವಾಂತಕನೈದಿದವು ದಂಡಿಗೆಗಳರಸಿಯರ
ಆ ನಿಖಿಳ ನೃಪವರ್ಗ ಯಾದವ
ಸೇನೆ ಕವಿದುದು ಪಾಂಡುಪುತ್ರರ
ಕಾನನವ ಕರುಣಾಳು ಹೊಕ್ಕನು ಹಲವು ಪಯಣದಲಿ ೫

ಕೇಳಿದಾಗಳೆ ಬಂದರಾ ಪಾಂ
ಚಾಲ ಕೇಕಯ ಧೃಷ್ಟಕೇತು ನೃ
ಪಾಲ ಕುಂತೀಭೋಜ ಸೃಂಜಯ ಸೋಮಕಾದಿಗಳು
ಮೇಲೆ ಮೇಲೀ ನಾಲ್ಕು ದಿನದಲಿ
ಮೂಲೆಯರಸುಗಳಿವರ ಕಂಡುಪ
ಲಾಲಿಸಲು ಬರುತಿರ್ದರಾ ಕಾಮ್ಯಕ ವನಾಂತರಕೆ ೬

ಇವರು ಬಂದರು ನಿಖಿಳ ಭೂಸುರ
ನಿವಹ ಸಹಿತಿದಿರಾಗಿ ವರ ಬಾಂ
ಧವರೊಳಭಿವಂದ್ಯರಿಗೆ ತತ್ಸಮರಿಗೆ ಕನಿಷ್ಠರಿಗೆ
ಅವರಿಗವರವರುಚಿತ ಸತ್ಕಾ
ರವನು ಮಾಡಿ ಮುರಾರಿಯಂಘ್ರಿಯ
ನವಿರಳಾಶ್ರುಗಳಿಂದ ನಾದಿದರರಸ ಕೇಳೆಂದ ೭

ಬೇರೆ ಬೇರೈವರನು ತೆಗೆದು ಮು
ರಾರಿಯಪ್ಪಿದನಡಿಗಡಿಗೆ ದೃಗು
ವಾರಿಗಳನೊರಸಿದನು ಪೀತಾಂಬರದ ಸೆರಗಿನಲಿ
ಸಾರು ಸಾರೆನಲುಗ್ಗಡಣೆಯ ವಿ
ಕಾರವಿನ್ನೇಕೆನುತ ರಾಯನ
ನಾರಿ ಬಂದಳು ಕವಿದು ಬಿದ್ದಳು ಹರಿಯ ಚರಣದಲಿ ೮

ಒರಲಿದಳು ದೆಸೆಯೊಡನೊರಲೆ ಮಿಗೆ
ಹೊರಳಿದಳು ಹರಿ ಪಾದದಲಿ ಮೈ
ಮರೆದಳಂಗನೆ ತನುವ ಮುಸುಕಿದ ಕೇಶಪಾಶದಲಿ
ಕರಗಿದಳು ಕಂದಿದಳು ಮಮ್ಮಲ
ಮರುಗಿ ಕರುಗಂದಿದಳು ದೃಗು ಜಲ
ದೊರತೆಯುಕ್ಕಿತು ಮೇಲೆ ಮೇಲೆ ಮಹೀಶನಂಗನೆಗೆ ೯

ಹಿಂದೆ ಸೆಳೆಸೀರೆಯಲಕಟ ಗೋ
ವಿಂದ ರಕ್ಷಿಸನಾಥನಾಥ ಮು
ಕುಂದ ಕಾಯೈ ಕೃಷ್ಣ ರಕ್ಷಿಸು ಕರುಣಿಸಸುರಾರಿ
ಇಂದಿರಾಪತಿಯೇ ಯಶೋದಾ
ನಂದನನೆ ಕಾರುಣ್ಯನಿಧಿ ಸಲ
ಹೆಂದರುಳುಹಿದ ದೈವ ನೀ ಮೈದೋರಿದೈ ತನಗೆ ೧೦

ಶ್ರುತಿಗಳಿಗೆ ಮೈದೋರೆ ಸುಪತಿ
ವ್ರತೆಯರಿಗೆ ಗೋಚರಿಸೆಯತಿ ಸಂ
ತತಿಯ ನಿರ್ಮಳ ಸಾರ ಸಮ್ಯಜ್ಞಾನ ದೀಧಿತಿಗೆ
ಮತಿಗೊಡದ ಮಹಿಮಾಂಬುನಿಧಿಯೆನ
ಗತಿಶಯವನೇ ಮಾಡಿ ಲಜ್ಜಾ
ಸ್ಥಿತಿಯನುಳುಹಿದ ದೈವ ನೀ ಮೈದೋರಿದೈ ತನಗೆ ೧೧

ಪೆಸರುಗೊಂಡರೆ ಹಿಂದೆ ಬಂದು
ಬ್ಬಸದ ಭಾರ ವ್ಯಸನವನು ಹಿಂ
ಗಿಸಿದೆ ಸಾಕ್ಷಾದ್ದೃಷ್ಟ ದರುಶನವೇನನಿತ್ತಪುದೊ
ಹೆಸರುಗೊಳಲರಿಯದೆ ಮನೋವಾ
ಗ್ವಿಸರ ಮರಳಿದ ತರ್ಕ ನಿಗಮ
ಪ್ರಸರಣದ ಪರದೈವ ನೀ ಮೈದೋರಿದೈ ತನಗೆ ೧೨

ಪತಿಗಳಿವರಂಜಿದರು ಧರ್ಮ
ಸ್ಥಿತಿಯನರಿದವರಳುಕಿದರು ತ
ತ್ಪಿತೃ ಪಿತಾಮಹ ಗುರುಗಳಡಗಿದರವನಿಯಲಿ ಬಗಿದು
ಗತಿವಿಹೀನೆಗೆ ಕೃಷ್ಣ ನೀನೇ
ಗತಿಯೆನುತ ಬಾಯ್ಬಿಡಲು ಲಜ್ಜಾ
ಸ್ಥಿತಿಯನುಳುಹಿದ ದೈವ ನೀ ಮೈದೋರಿದೈ ತನಗೆ ೧೩

ದಾನ ಯಜ್ಞ ತಪೋವ್ರತಾನು
ಷ್ಠಾನ ನಿಷ್ಠರು ಕಾಣರಷ್ಟ ವಿ
ಧಾನ ಯೋಗದ ಸಿದ್ಧರರಿಯರು ನಿನ್ನ ಸುಳಿವುಗಳ
ಜ್ಞಾನಮಧ್ಯ ತ್ರಿಪುಟಿಯನು ಸಂ
ಧಾನ ರಹಿತ ಜ್ಞಪ್ತಿರೂಪನು
ತಾನೆನಿಪ ಪರಬೊಮ್ಮ ನೀ ಮೈದೋರಿದೈ ತನಗೆ ೧೪

ಕಾಯಿದೈ ಪ್ರಹ್ಲಾದ ಮಾರ್ಕಂ
ಡೇಯ ವನಗಜವಂಬರೀಷನ
ಕಾಯಿದೈ ಕಾರುಣ್ಯದಲಿ ಪಾತಕಿಯಜಾಮಿಳನ
ಕಾಯಿದೈ ಗೋವಿಂದಯೆನೆ ತ
ನ್ನಾಯತಿಕೆಯಭಿಮಾನವನು ನೀ
ಕಾಯಿದೈ ಹರಿಯೆನುತ ಪದದಲಿ ಹೊರಳಿದಳು ತರಳೆ ೧೫

ಏಳು ತಾಯೆ ಸರೋಜಮುಖಿ ಪಾಂ
ಚಾಲೆ ನೊಂದೌ ತಂಗಿಯೆನುತ ಕೃ
ಪಾಳು ಕಂಬನಿದೊಡೆದು ಕೊಡಹಿದನವಯವದ ರಜವ
ಮೇಲು ಮುಚ್ಚಳ ತೆರೆದ ತನುವಿನ
ಹೇಳಿಗೆಯ ಶೋಕಾಹಿಯಂತಿರೆ
ಲೋಲಲೋಚನೆಯಳಲು ಮಿಗೆ ಹೆಕ್ಕಳಿಸಿತಡಿಗಡಿಗೆ ೧೬

ಆ ಸಕಲ ಪರಿವಾರವಾ ಧರ
ಣೀಶರಾ ಮುನಿ ನಿಕರವಾ ಜನ
ವಾ ಸತೀ ನಿಕುರುಂಬವಾ ಗಜ ಘೋಟಕ ವ್ರಾತ
ಆ ಸರೋಜಾನನೆಯ ಬಹಳ
ಕ್ಲೇಶಗಳ ಕಂಡಕ್ಷಿಜಲ ವಾ
ರಾಶಿಯಲಿ ತೇಕಾಡುತಿರ್ದುದು ರಾಯ ಕೇಳೆಂದ ೧೭

ಮುಡಿಯ ಸಂವರಿಸಬಲೆ ಸೀರೆಯ
ನುಡು ನವಾಂಬರವಿದೆ ವಿರೋಧವ
ಬಿಡು ಸುಯೋಧನ ರಾಜಸಂತತಿಯುರಿದುದಿನ್ನೇನು
ಕೆಡಿಸಿಕೊಂಡರು ನಾಯ್ಗಳಿನ್ನದ
ನುಡಿದು ಫಲವೇನಕಟ ಕೈಕೊಂ
ಡಡವಿಯನುಭವ ಸವೆಯೆ ಸೈರಿಪುದೆಂದನಸುರಾರಿ ೧೮

ತುರುಬ ಕಟ್ಟುವ ಹದನ ನಿಮ್ಮಡಿ
ಯರಿಯದೆಂಬೆನೆ ಸಕಲ ಸಚರಾ
ಚರದ ಚೇತನರೂಪ ದೇಹಿ ನಿಕಾಯ ಕೃತಸಾಕ್ಷಿ
ತರಿದು ದುಶ್ಶಾಸನನ ವಕ್ಷದೊ
ಳೊರೆವ ರಕುತದೊಳದ್ದಿ ಕಟ್ಟುವ
ದುರುಬನರಿಯಾ ಕೃಷ್ಣಯೆಂದಳು ಕಮಲಮುಖಿ ನಗುತ ೧೯

ಐಸಲೇ ದುರ್ಯೋಧನಾದಿಗ
ಳೀಸರವದಿರು ಭೀಮ ಪಾರ್ಥರ
ಬೀಸರಕೆ ಬಲುಗೈಯೆ ಬರ್ಹಿರ್ಮುಖರ ಭಾರವಣೆ
ದೂಸಕನ ರಕ್ತದಲಿ ನಿನ್ನಯ
ಕೇಶವನು ಕಟ್ಟಿಸುವೆ ನಿನ್ನಯ
ಭಾಷೆ ತನ್ನದು ತಾಯೆ ತವಕಿಸಬೇಡ ನೀನೆಂದ ೨೦

ವರ ತಪಸ್ವಿನಿ ನೀನು ನಿನ್ನನು
ಕೆರಳಿಚಿದರೇ ಕುನ್ನಿಗಳು ಮಿಗೆ
ಭರತಸಂತತಿ ಫಲಿತ ಕದಳಿಯ ತೆರದೊಳಾಯಿತಲ
ಕುರುಡನರಿಯದೆ ಹೋದರೆಯು ಕಂ
ಗುರುಡರಾದರೆ ಭೀಷ್ಮ ವಿದುರಾ
ದ್ಯರು ಮಹಾದೇವೆನುತ ಮುರರಿಪು ತೂಗಿದನು ಶಿರವ ೨೧

ಶಕುನಿ ಕಲಿಸಿದ ಕಪಟವೇ ಕೌ
ಳಿಕದ ಜೂಜಿದು ನಿಮ್ಮನೀ ಕಾ
ಮ್ಯಕಕೆ ತಂದುದು ಜೂಜಿನಲಿ ತಾನಿಲ್ಲಲೇಯೆನಲು
ಸಕಲ ಜೀವರ ಕರ್ಣಸಾಕ್ಷಿ
ಪ್ರಕರ ಚೈತನ್ಯ ಸ್ವರೂಪಾ
ತ್ಮಕನು ನೀನಲ್ಲಿಲ್ಲ ಹುಸಿಯಲ್ಲೆಂದಳಿಂದುಮುಖಿ ೨೨

ದೇವಿ ತಾನಿದನರಿದೊಡಾ ವಸು
ದೇವನಾಣೆ ಮಹಾದ್ಭುತವನದ
ನೇವೊಗಳ್ವೆನು ಯದುನೃಪಾಲ ವಿಪತ್ಪರಂಪರೆಯ
ನೀವು ಮಾಡಿದ ಯಜ್ಞ ಮುಖದ ವ
ಳಾವಳಿಯೊಳಾವಿರಲು ಮುತ್ತಿತು
ದೇವರಿಪುಬಲ ನಿಕರವಸ್ಮದ್ದ್ವಾರಕಾಪುರಿಯ ೨೩

ಲಗ್ಗೆಗಳುಕುವುದಲ್ಲಲೇ ಬಲು
ದುರ್ಗವದು ದುರ್ಭೇದವವರೊಳ
ಗಗ್ಗಳಿಯರಿದ್ದುದು ಹಲಾಯುಧ ಮನ್ಮಥಾದಿಗಳು
ಬಗ್ಗಿ ಕವಿವ ಕಠೋರ ದೈತ್ಯರ
ನುಗ್ಗುನುರಿ ಮಾಡಿದರು ಹರಣದ
ಸುಗ್ಗಿ ಮೆರೆದುದು ಮಾರ್ಬಲದೊಳಬುಜಾಕ್ಷಿ ಕೇಳೆಂದ ೨೪

ಅಳುಕಿ ಮುತ್ತಿಗೆದೆಗೆದು ಸಾಲ್ವನ
ದಳ ಮುರಿದು ನಿಜಪುರಕೆ ಹಾಯ್ದುದು
ಗೆಲವು ಸಾತ್ಯಕಿ ರಾಮಕಾಮಾದಿಗಳ ವಶವಾಯ್ತು
ಬಳಿಕ ನಿಮ್ಮಯ ರಾಜಸೂಯಕೆ
ಕಳಶವಿಟ್ಟು ಮದೀಯ ನಗರಿಯ
ಕಳವಳವ ಸಂತೈಸಿ ನಡೆದೆವು ಸಾಲ್ವ ಪಟ್ಟಣಕೆ ೨೫

ಏನನೆಂಬೆನು ಸಾಲ್ವಪುರದ ನ
ವೀನ ಮಾಯಾರಚನೆಯನು ನಮ
ಗಾನಲಸದಳವುಳಿದ ಗೀರ್ವಾಣರಿಗೆ ಗೋಚರವೆ
ದಾನವನ ಮಾಯಾಪುರದ ಸಂ
ಸ್ಥಾನ ವರ್ಮವನರಿದು ಶರ ಸಂ
ಧಾನದಲಿ ಸಂಹರಿಸಿದೆವು ಸಾಲ್ವಾದಿ ರಿಪುಭಟರ ೨೬

ಅತ್ತಲಾ ಕೋಳಾಹಳದಲಿರ
ಲಿತ್ತಲಾದುದು ಜೂಜು ನಿಮ್ಮ ವಿ
ಪತ್ತು ಕಂಡುದು ತೆರಹ ತಪ್ಪಿಸಿ ನಮ್ಮ ಸುಳಿವುಗಳ
ಇತ್ತಲಾವಿರೆ ಮೇಣು ದೋರಕಿ
ಯತ್ತಲಿರೆ ನೀವಡವಿವೊಕ್ಕರೆ
ಹೆತ್ತಳೋ ದೇವಕಿ ಮಗನನೆಂದನು ಮುರಧ್ವಂಸಿ ೨೭

ದ್ವಾರಕಾ ತತ್ಪುರದಲಿರುವತಿ
ದೂರದಲ್ಲಿರು ಮೇಣು ನಮ್ಮಯ
ಸಾರೆ ನಿಮ್ಮಡಿಯಿರಲಿ ನಿಮ್ಮೀ ಪಾಂಡುನಂದನರ
ಭಾರ ನಿಮ್ಮದು ಭಕ್ತ ಜನದಾ
ಧಾರ ನೆಮ್ಮಿದನಾಥರಾವತಿ
ಕಾರಣಿಕ ನೀನೆಂದು ಬಿದ್ದಳು ಮತ್ತೆ ಚರಣದಲಿ ೨೮

ಮಗನ ಕರೆದರೆ ಯಮನ ದೂತರ
ತಗುಳುವಂದು ಸಮೀಪವರ್ತಿಯೆ
ನಗಧರ ಶ್ರೀಕಾಂತ ಸಲಹೆನೆ ಮುನಿ ಕುಮಾರಕನ
ಉಗುಳಿಚಿದೆಲಾ ಮೃತ್ಯುವಿನ ತಾ
ಳಿಗೆಯೊಳಂದು ಸಮೀಪವರ್ತಿಯೆ
ಜಗದುದರ ನೀ ಜಾಣನಹೆಯೆಂದಳು ಸರೋಜಮುಖಿ ೨೯

ಆಯಿತೇಳೌ ತಂಗಿ ನೀ ಪಿರಿ
ದಾಯಸವನನುಭವಿಸಲುದಿಸಿದೆ
ರಾಯನಾಡಿದ ಭಾಷೆ ಸಲಲಿ ವನಪ್ರವಾಸದಲಿ
ವಾಯುತನುಜನ ಕೈಯಲೇ ನೀ
ನ್ನಾಯತಿಕೆಯಹುದಾ ಪ್ರತಿಜ್ಞೆಗೆ
ತಾಯೆ ತಾ ಹೊಣೆಯೆಂದು ಕೊಟ್ಟನು ಸತಿಗೆ ನಂಬುಗೆಯ ೩೦

ಸಂತವಿಟ್ಟನು ಬೇರೆ ಬೇರೆ ಕೃ
ತಾಂತಸುತ ಭೀಮಾದಿಗಳ ಮುನಿ
ಸಂತತಿಯ ಮನ್ನಿಸಿದನವರವರುಚಿತ ವೃತ್ತಿಯಲಿ
ಎಂತು ಹದಿಮೂರಬುದವೀ ನೃಪ
ಸಂತತಿಗೆ ಸೌಹಾರ್ದವಕಟ ವ
ನಾಂತರದೊಳೆಂದಸುರರಿಪು ನುಡಿದನು ಯುಧಿಷ್ಠಿರಗೆ ೩೧

ಕಳುಹುವುದು ಸೌಭದ್ರೆಯನು ನಿಜ
ಲಲನೆಯರನವರವರ ತಾಯ್ವನೆ
ಗಳಿಗೆ ಬೀಳ್ಕೊಡು ನಿಮ್ಮ ಪಂಚದ್ರೌಪದೀಸುತರ
ಹಳುವ ದಾಟಲಿ ದ್ರುಪದ ನಂದನೆ
ಯಳಲ ಶಿಖಿಗಿಂಧನವಲೇ ಕುರು
ಕುಲದ ಕರಡದ ಬಣಬೆ ಕಾದುರುಹುವುದು ಕೇಳೆಂದ ೩೨

ಎಂದು ಕಳುಹಿ ಸುಭದ್ರೆಯನು ನರ
ನಂದನನ ಬೀಳ್ಕೊಡಿಸಿದನು ನೃಪ
ನಂದನರ ಕಳುಹಿದನಾ ಪಾಂಚಾಲ ನೃಪನೊಡನೆ
ಇಂದುವದನೆಯ ಸಂತವಿಟ್ಟು ಮು
ಕುಂದ ರಥವೇರಿದನು ಕುಂತೀ
ನಂದನರು ಕಳುಹುತ್ತ ಬಂದರು ಕಮಲಲೋಚನನ ೩೩

ಬೀಳುಗೊಂಡರು ಕೃಷ್ಣನನು ಪಾಂ
ಚಾಲಪತಿಯನು ಪಂಚ ಕೇಕಯ
ಚೋಳ ಕೇರಳ ಪಾಂಡ್ಯ ಕುಂತೀಭೋಜ ನಂದನರ
ಬೀಳುಕೊಟ್ಟರು ಧೃಷ್ಟಕೇತು ನೃ
ಪಾಲ ಮೊದಲಾದಖಿಳ ಧರಣೀ
ಪಾಲಕರು ದುಗುಡದಲಿ ಹೊಕ್ಕರು ತಮ್ಮ ನಗರಿಗಳ ೩೪

ಸಂತವಿಸಿ ಪಾಂಡವರನಾ ಮುನಿ
ಸಂತತಿಯ ಮನ್ನಿಸಿ ಮಹೀಭಾ
ರಾಂತರವ ನಿಶ್ಚಯಿಸಿ ಭಾರತ ಪಾರಿಶೇಷಕವ
ಅಂತಕಾಂತಕ ನಲವು ಮಿಗೆ ಜಗ
ದಂತರಂಗಸ್ಥಾಯಿ ಲಕ್ಷ್ಮೀ
ಕಾಂತ ಬಿಜಯಂಗೈದು ಹೊಕ್ಕನು ದೋರಕಾಪುರಿಯ ೩೫

ನೂರನೆಯ ಸಂಧಿ

ಸೂ. ಬರುತ ಕಂಡನು ಕಣ್ವನಾಶ್ರಮ
ವರದ ಜಂಬೂಫಲವ ಮಾರುತಿ
ತರಲು ಯಮಸುತ ಹಲುಬೆ ಮುರರಿಪು ಶಾಖೆಗಡರಿಸಿದ

ಕೇಳು ಜನಮೇಜಯ ಧರಿತ್ರೀ
ಪಾಲ ಯಮಸುತ ಮುನಿಜನಂಗಳ
ಮೇಳದಲಿ ಹೊರವಂಟು ತನ್ನನುಜಾತರೊಡಗೂಡಿ
ತಾಳಿಗೆಯ ತಲ್ಲಣದ ಗಿರಿಗಳ
ಮೇಲೆ ಚರಿಸುತ ಬಂದು ವಿಪಿನ
ವ್ಯಾಳ ಗಜ ಶಾರ್ದೂಲ ಸಿಂಹಾದಿಗಳನೀಕ್ಷಿಸುತ ೧

ಬರಬರಲು ಮುಂದೊಂದು ವನದೊಳು
ಚರಿಪ ಪಕ್ಷಿ ಮೃಗಾಳಿ ತಳಿತಿಹ
ಬಿರಿಮುಗುಳನೀಕ್ಷಿಸುವ ಮರಿದುಂಬಿಗಳ ಮೇಳವದ
ಪರಿಪರಿಯ ಮರ ಪೂ ಫಲಂಗಳ
ನಿರದೆ ಕೊಡುತಿರೆ ಪಕ್ಷಿಮೃಗಕುಲ
ವೆರಸಿ ಮೆರೆದವು ಬನದ ಸುತ್ತಲು ರಾಯ ಕೇಳೆಂದ ೨

ತುಂಬುರರಳಿ ಲವಂಗ ಪಾದರಿ
ನಿಂಬೆ ಚೂತ ಪಲಾಶ ಪನಸಸು
ಜಂಬು ಗುಗ್ಗುಳಶೋಕ ವಟ ಪುನ್ನಾಗ ಚಂಪಕದ
ಕುಂಭಿನಿಯೊಳುಳ್ಳಖಿಳ ವೃಕ್ಷಕ
ದಂಬದಲಿ ವನ ಮೆರೆದುದದನೇ
ನೆಂಬೆನೀ ಪರಿವಾರ ತುಂಬಿತು ಲಲಿತ ನಂದನದ ೩

ತಿಳಿಗೊಳನ ಮಧ್ಯದಲಿ ಮೆರೆದಿಹ
ನಳಿನ ನೃಪನಿದಿರಿನಲಿ ಮಧುಪಾ
ವಳಿ ರವದ ಗಾಯಕರ ಪಿಕಪಾಠಕರ ನೃತ್ಯಗಳ
ಲಲಿತ ನವಿಲಿನ ವಾದ್ಯಗಳ ಘುಳು
ಘುಳಿಪ ಕೊಳರ್ವಕ್ಕಿಗಳ ಲಕ್ಷ್ಮೀ
ಲಲನೆಯರಮನೆಯೆನಲು ಮೆರೆದುದು ಭೂಪ ಕೇಳೆಂದ ೪

ಬಂದು ಭೂಪತಿ ಕೊಳನ ತೀರದೆ
ನಿಂದು ತಮಗಾಶ್ರಯದ ಠಾವಹು
ದೆಂದು ಭೀಮಂಗರುಹಲಾ ಕ್ಷಣವಾತನೈತಂದು
ತಂದು ತಳಿರನು ಪರ್ಣಶಾಲೆಗ
ಳಂದದಲಿ ರಚಿಸಿದನು ಭೂಸುರ
ವೃಂದ ಬಿಟ್ಟುದು ಧರ್ಮಪುತ್ರನ ಸುತ್ತುವಳಯದಲಿ ೫

ದಿನಪನಪರಾಂಬುಧಿಯನೈದಲು
ವನಜ ಮುಗಿದವು ಚಕ್ರವಾಕದ
ಮನಕೆ ಖತಿ ಕುಮುದಿನಿಗೆ ಮುದ ಯಾಮಿನಿಗೆ ಸುಮ್ಮಾನ
ಕನಕಮಯ ವರ ರಥವನಡರಿದು
ದನುಜರನು ಸಂಹರಿಸೆ ಕಮಲಿನಿ
ಮನದೊಳುತ್ಸಾಹಿಸಲು ರವಿಯುದಯಾಚಲಕೆ ಬಂದ ೬

ಋಷಿಗಳೊಳು ಮೇಳವು ವರಾಸನ
ವೆಸೆವ ಬನದೊಳು ಬಳಿಕ ಗಂಗಾ
ಪ್ರಸರದಲಿ ಸ್ನಾನ ಭೋಜನ ಕಾಲದಲಿ ಪಾನ
ಮಿಸುಪ ಸುತಿಯ ವಿಲಾಸಗಳ ಸಂ
ತಸದಿ ಕೇಳ್ವ ಸಮಾಸಪೂರಿತ
ವಸುಮತೀಧರ ಯಮಜನೆಸೆದನು ಭೂಪ ಕೇಳೆಂದ ೭

ಇರುತಿರಲು ಕಲಿಭೀಮ ಮೃಗಯಾ
ತುರದಲಖಿಳ ಕಿರಾತರುಗಳೊಡ
ವೆರಸಿ ಹೊಕ್ಕನು ಗಿರಿತರುವ್ರಜ ಬಹಳ ಕಾನನವ
ವರಹ ಮರೆ ಸಾರಂಗ ಪೆರ್ಬುಲಿ
ಕರಡಿ ವೃಕ ಶಾರ್ದೂಲ ಕೇಸರಿ
ಕರಿ ಕಳಭವೋಡಿದವು ದೆಸೆದೆಸೆಗೈದಿ ತಲ್ಲಣಿಸಿ ೮

ಹಾಸಗಳಲೆವಿಡಿವ ನಾಯ್ಗಳ
ಬೀಸುವಲೆಗಳ ಕಾಲಗಣ್ಣಿಯ
ಸೂಸುವಲೆಗಳ ಧನು ಸರಳ ಭಾಸುರದ ಕುಪ್ಪಸದ
ಕೇಶದಲಿ ತಳಿರುಗಳ ಬಿಗಿದು ವಿ
ಳಾಸದಲಿ ಹೊರವಂಟು ಹೆಬ್ಬಲೆ
ಬೀಸಿದರು ಬೇಂಟೆಗರು ಬಹಳ ಮೃಗಂಗಳನು ಕೆಡಹಿ ೯

ಕೊಡಹಿ ಬಿಸುಟನು ಕೇಸರಿಯ ಕಾ
ಲ್ವಿಡಿದು ಸೀಳಿದ ಕರಿಗಳನು ಬೆಂ
ಬಿಡದೆ ಹಿಡಿದಪ್ಪಳಿಸಿದನು ಶಾರ್ದೂಲ ಹೆಬ್ಬುಲಿಯ
ಅಡಗೆಡಹಿ ಪೆರ್ಮರಿ ವರಾಹನ
ಮಡದಲುರೆ ಘಟ್ಟಿಸಿ ವಿನೋದದಿ
ನಡೆಯೆ ಧರೆ ಕಂಪಿಸಿತು ಭೀಮನ ಪದದ ಘಲ್ಲಣೆಗೆ ೧೦

ಬಂದನತಿಬೇಂಟೆಯಲಿ ಚರಿಸುತ
ನಿಂದು ಹತವಾದಖಿಳ ಮೃಗಗಳ
ಸಂದು ವ್ಯಾಧರ ನಿಕರಕಿತ್ತನು ಪವನಜಾತ್ಮಜನು
ತಂದರವದಿರು ತವತವಗೆ ಪರಿ
ತಂದು ತರು ಶಿಖಿಯಿಂದ ದಹಿಸಿದೆ
ರಂದು ಮಾಂಸವನೊಲಿದು ಭಕ್ಷಿಸಿದರು ವಿನೋದದಲಿ ೧೧

ಮುಂದೆ ಕಂಡನು ದೂರದಲ್ಲಿಹ
ನಂದನದ ಮೆಳೆ ತರು ನಿಕಾಯದ
ಸಂದಣಿಯ ಪೂಗೊಂಚಲಿನ ಪಲ್ಲವ ನಿಕಾಯದಲಿ
ಗೊಂದಣದ ತರು ಮಧ್ಯದಲ್ಲಿಹು
ದೊಂದು ಜಂಬೂವೃಕ್ಷ ಮೆರೆದಿರೆ
ನಿಂದು ನೋಡಿದು ಭೀಮ ವಿಸ್ಮಯಗೊಂಡನಾ ಕ್ಷಣಕೆ ೧೨

ಇದು ವಿಚಿತ್ರದ ಫಲವು ತಾನೊಂ
ದಿದೆ ಮತಂಗಜ ಗಾತ್ರದಲಿ ತಾ
ನಿದನು ಕೊಂಡೊಯ್ವೆನು ಮಹೀಪಾಲಕನ ದರುಶನಕೆ
ಗದೆಯ ಕಕ್ಷದಲೌಕಿ ಮಾರುತಿ
ಮಧುರಿಪುವ ನೆನೆವುತ್ತಲಾನಂ
ದದಲಿ ವೃಕ್ಷವನಡರಿ ಕೊಯ್ದಿಳುಹಿದನು ನಿಮಿಷದಲಿ ೧೩

ಫಲವ ಕೊಂಡಾ ಭೀಮ ಬೇಗದಿ
ನಲವಿನಲಿ ನಡೆತಂದು ಭೂಪನ
ನಿಳಯದಲಿ ತಂದಿಳುಹಿದರೆ ಯಮಸೂನು ಬೆರಗಾಗಿ
ಕೆಲದಲಿದ್ದನುಜರಿರ ಋಷಿ ಜನ
ಗಳಿರ ನೋಡಿರೆಯೆನಲು ಶಿವಶಿವ
ನಳಿನನಾಭನೆ ಬಲ್ಲನೆಂದರು ಸಕಲ ಋಷಿವರರು ೧೪

ಎನಲು ಸಹದೇವನ ಯುಧಿಷ್ಠಿರ
ಜನಪ ಬೆಸಗೊಳುತಿರಲು ಬಿನ್ನಹ
ದನುಜರಿಪು ಹರ ಕಮಲಭವರಿಗೆ ಕೊಡುವ ಶಾಪವನು
ಅನುವ ಕಾಣೆನು ಕಣ್ವಮುನಿ ತಾ
ಮುನಿದನಾದರೆ ಶಪಿಸುವನು ಯೆಂ
ದನು ತ್ರಿಕಾಲಜ್ಞಾನಿ ಮಾದ್ರೀಸುತನು ಭೂಪತಿಗೆ ೧೫

ವರುಷಕೊಂದೇ ಫಲವಹುದು ಅದ
ನರಿತು ಯೋಗಧ್ಯಾನದಲಿ ಕಂ
ದೆರೆದು ಕರ ಸಂಪುಟವನರಳಿಚಲಾಗಲಾ ಫಲವು
ಇರದೆ ಹಸ್ತದೊಳಿಳಿಯಲಾ ಮುನಿ
ಹರುಷದಿಂದದ ತಳೆದು ಕೊಂಬನು
ಪರಶಿವ ಧ್ಯಾನೈಕ ದೃಷ್ಟಿಯೊಳಿಪ್ಪನಾ ಮುನಿಪ ೧೬

ಕಂದೆರೆದು ಮುನಿ ನೋಡಿದೊಡೆ ತಮ
ಗಿಂದು ಹರುವಹುದೆನುತ ಧರ್ಮಜ
ನೊಂದು ಫಲಗುಣ ಭೀಮ ಸಹದೇವಾದಿಗಳು ಸಹಿತ
ಬಂದನತಿ ವೇಗದಲಿ ಪವನಜ
ನಂದು ವೃಕ್ಷವ ತೋರಿಸಿದನೇ
ನೆಂದು ಬಣ್ಣಿಪೆ ಬಹಳ ಕೊನೆಗಳ ಗಗನ ಚುಂಬಿತವ ೧೭

ಕಂಡು ಯಮಸುತನತಿ ಭಯದಿನಿದ
ಖಂಡಪರಶುವೆ ಬಲ್ಲ ನಾವ್ ಮುಂ
ಕೊಂಡು ಮಾಡಿದ ದುಷ್ಕೃತದ ಫಲವೆನುತ ಬಿಸುಸುಯ್ವ
ಚಂಡವಿಕ್ರಮ ಭೀಮನದ ಕೈ
ಕೊಂಡು ತಾನವಿವೇಕದಲಿಯು
ದ್ದಂಡತನದಿಂ ತಂದ ಹತ್ತಿಸಲರಿದು ನಮಗೆಂದ ೧೮

ಹೇಳಿರೈ ಭೂಸುರರು ಋಷಿಗಳು
ಮೇಲೆ ಹತ್ತುವುಪಾಯವನು ಋಷಿ
ಜಾಲದೊಳಗೆಂದೆನಲು ನುಡಿದನು ಧೌಮ್ಯ ನಸುನಗುತ
ಹೇಳಲರಿದಿದ ನಿಮ್ಮ ಸಲಹುವ
ಬಾಲಕೇಳಿಯ ಕೃಷ್ಣನ ಬಲ್ಲನು
ಕಾಲವನು ನೂಕದೆ ಮಹಾತ್ಮನ ಭಜಿಸು ನೀನೆಂದ ೧೯

ಎನಲು ಭೂಪತಿ ಕೃಷ್ಣ ರಕ್ಷಿಸು
ದನುಜರಿಪು ಗೋವಿಂದ ರಕ್ಷಿಸು
ವನಜನಾಭ ಮುಕುಂದ ರಕ್ಷಿಸು ರಾವಣಾಂತಕನೆ
ಮನಸಿಜನ ಪಿತ ರಾಮ ರಕ್ಷಿಸು
ಘನಮಹಿಮ ಕೇಶವನೆ ರಕ್ಷಿಸು
ನೆನೆವ ಭಕ್ತಳ ಭಾಗ್ಯನಿಧಿ ಮಾಧವನೆ ರಕ್ಷಿಪುದು ೨೦

ಎಂದು ಭಜಿಸುತ್ತಿರಲು ನೃಪ ಗೋ
ವಿಂದನಮಳಜ್ಞಾನದಲಿ ಸಾ
ನಂದದಿಂದಲೆ ಸತ್ಯಭಾಮಾದೇವಿಯರ ಕೂಡೆ
ಮಂದವಂತಿ ಪವಮಾನಜನ ಕತ
ದಿಂದ ಪಾಂಡು ಕುಮಾರರಿಗೆ ಕೇ
ಡಿಂದು ಬಹುದಾ ಋಷಿಯ ಶಾಪದಿ ಶಿವಶಿವಾಯೆಂದ ೨೧

ಎನುತ ಸಿಂಹಾಸನವನಿಳಿದಾ
ದನುಜರಿಪು ಕಮಲಾಕ್ಷಿ ನೀ ನಿ
ಲ್ಲೆನುತ ಮನವೇಗದಲಿ ಬಂದನು ಧರ್ಮಜನ ಹೊರೆಗೆ
ನೆನೆಯೆ ಲಕ್ಷ್ಮೀಕಾಂತ ಬಂದನು
ಘನದುರಿತ ದಾವಾಗ್ನಿ ಬಂದನು
ಯೆನುತ ಮೈಯಿಕ್ಕಿದನು ಮುನಿಜನ ಸಹಿತ ಯಮಸೂನು ೨೨

ತೆಗೆದು ತಕ್ಕೈಸಿದನು ಭೂಪನ
ಮಿಗೆ ಹರುಷದಲಿ ಭೀಮ ಪಾರ್ಥರ
ನೆಗಹಿ ಮೈದಡವಿದನು ಮಾದ್ರೀಸುತರ ದ್ರೌಪದಿಯ
ನಗುತ ಋಷಿಜನ ವಿಪ್ರ ಧೌಮ್ಯಾ
ದಿಗಳನುಚಿತೋಕ್ತಿಯಲಿ ಮನ್ನಿಸು
ತಗಧರನು ನೋಡಿದನು ಜಂಬೂಫಲದ ಘನತರವ ೨೩

ಕಾಳು ಮಾಡಿದಿರಕಟಕಟಾ ನೀವ್
ಮೇಲನರಿಯದೆ ಋಷಿಯ ಶಾಪವ
ನಾಲಿಸಿದೆ ವರ ಮೂರ್ಖತನದಲೆ ನೆನೆದಿರನುಚಿತವ
ಏಳಿ ಫಲವನು ತೊಟ್ಟ ಸರಿಸಕೆ
ಕಾಲದಲಿ ತಂದಿರಿಸಿ ನಿಮ್ಮನು
ಕೂಲಧರ್ಮಂಗಳನು ಬೇಗದಿ ಹೇಳಿ ನೀವೆಂದ ೨೪

ಎನಲು ತಂದಿರಿಸಿದರು ಫಲವನು
ವನಜನಾಭನ ಹೇಳಿಕೆಯಲಾ
ಕ್ಷಣಕೆ ಕುಂತೀತನುಜ ಹೇಳಿನೆ ಕೈಗಳನು ಮುಗಿದು
ಇನ ಶಶಿಗಳಿಂದ್ರಾನಲಾಂತಕ
ದನುಜ ವರುಣ ಸಮೀರ ಹರಸಖ
ಮನುಮಥಾರಿಯೆ ನೀವು ಚಿತ್ತವಿಸೆನುತಲಿಂತೆಂದ ೨೫

ಶ್ಲೋಕ–

ಮಾತೃವತ್ ಪರದಾರಾಣಿ
ಪರದ್ರವ್ಯಾಣಿ ಲೋಷ್ಟವತ್
ಆತ್ಮವತ್ ಸರ್ವಭೂತಾನಿ
ಯಃ ಪಶ್ಯತಿ ಸ ಪಶ್ಯತಿ ॥೧॥

ಪರಸತಿಯೆ ನಿಜಜನನಿ ಪರ ಧನ
ವಿರದೆ ಲೋಷ್ಟವು ಜೀವರಾಶಿಯು
ಪರರ ನೋವನು ತನ್ನ ನೋವೆಂದೆನುತ ಭಾವಿಸುವೆ
ನಿರುತವೆನೆ ಫಲ ಧರೆಯ ಬಿಟ್ಟಂ
ತರದೊಳೊಮ್ಮೊಳ ನೆಗೆಯೆ ಮುರಹರ
ಮರುತಸುತ ಬಾರೆನಲು ನುಡಿದನು ಮುಗಿದು ಕರಯುಗವ ೨೬

ಶ್ಲೋಕ–

ಪ್ರಾಣಮೇವ ಪರಿತ್ಯಜ್ಯ
ಮಾನಮೇವಾಭಿರಕ್ಷತು
ಅನಿತ್ಯಮಧೃವಂ ಪ್ರಾಣಂ
ಮಾನಮಾಚಂದ್ರತಾರಕಂ ॥೨॥

ಜೀವವೀಕ್ಷಣವಳಿದು ಹೋಗಲಿ
ಕಾವುದಭಿಮಾನವನು ನಿತ್ಯದ
ಭಾವವಾಗಿಹುದಾತ್ಮವಾಚಂದ್ರಾರ್ಕವಭಿಮಾನ
ನಾವು ಬೇರೊಂದರಿಯೆವಿದ್ದು ದ
ದೇವರಿಗೆ ಬಿನ್ನವಿಸಿದೆವುಯೆನೆ
ಲಾವ ಬೇಗದಲಡರಿದುದೊ ಫಲವರಸ ಕೇಳೆಂದ ೨೭

ಏನಭಿಮತವು ಪಾರ್ಥ ನಿ
ಧಾನವನು ನುಡಿಯೆನಲು ಹೇಳುವೆ
ಮಾನನಿಧಿ ನಿಮಗರುಹುವೆನು ಚಿತ್ತವಿಸಿ ನೀವೆನುತ
ಧ್ಯಾನದಲಿ ಕೈಮುಗಿದು ಶಂಕರ
ನೀನೆ ಗತಿಯೆಂದೆನುತಲಾ ಶಶಿ
ಭಾನು ದಿಗುಪಾಲರಿಗೆ ನಮಿಸುತ ಕೇಳಿ ನೀವೆಂದ ೨೮

ಶ್ಲೋಕ–

ನಿಮಂತ್ರಣೋತ್ಸವೋ ವಿಪ್ರಾಃ
ಗಾವೋ ನವ ತೃಣೋತ್ಸವಾಃ
ಸುಭರ್ತಾರೋತ್ಸವಾ ನಾರ್ಯಃ
ಅಹಂ ಕೃಷ್ಣ ರಣೋತ್ಸವಃ ೩

ಪರಗೃಹದ ಭೋಜನಕೆ ವಿಪ್ರರು
ಪರಿಣಮಿಸುವೋಲ್ ಪಶು ಸಮೂಹವು
ಇರದೆ ನವತೃಣದಿಂದ ತುಷ್ಟಿಯನೈದುವಂದದಲಿ

ವರಸತಿಯು ನಿಜಪತಿಯು ಕಂಡಾ
ಹರುಷವಹುದೆನಗಾಸವದಲೆಲೆ
ಹರಿಯೆಯೆನೆ ಬೇಗದಲಿ ಫಲವಡರಿತ್ತು ನಿಮಿಷದಲಿ ೨೯

ಶ್ಲೋಕ–
ಧರ್ಮೋ ಜಯತು ನಾಧರ್ಮಃ
ಸತ್ಯಂ ಜಯತು ನಾನೃತಂ
ಕ್ಷಮಾ ಜಯತು ನ ಕ್ರೋಧೋ
ವಿಷ್ಣುರ್ಜಯತು ನಾಸುರಃ ॥೪॥

ಧರ್ಮವನು ನೆರೆ ಜಯಿಸಲರಿಯದ
ಧರ್ಮ ಸತ್ಯವ ಮೀರಲರಿವುದೆ
ನಿರ್ಮಳದ ಸ್ಮರಣೆಯು ಗೆಲುವುದೆ ಕ್ರೋಧ ಭಾವಿಸಲು
ಕರ್ಮಹರ ಕೃಷ್ಣನನು ಗೆಲುವರೆ
ದುರ್ಮತಿಗಳಹ ಅಸುರರೆನಲಾ
ಧರ್ಮತತ್ವವ ನಕುಲ ವಿರಚಿಸಲೈದಿತಾ ಫಲವು ೩೦

ಶ್ಲೋಕ–
ಸತ್ಯಂ ಮಾತಾ ಪಿತಾ ಜ್ಞಾನಂ
ಧರ್ಮೋಭ್ರಾತಾ ದಯಾ ಸಖಾ
ಶಾಂತಿಃಪತ್ನೀ ಕ್ಷಮಾಸೂನು
ಷ್ಷಡೈತೇ ಮಮ ಬಾಂಧವಾಃ ॥೫॥

ಸತ್ಯವೇ ನಿಜಮಾತೆ ಜ್ಞಾನವೆ
ನಿತ್ಯವಹ ಪಿತ ಧರ್ಮವನುಜನು
ಮತ್ತೆ ದಯವೇ ಮಿತ್ರ ಶಾಂತಿಯೆ ಪತಿ ಕ್ಷಮೆಸೂನು
ಸತ್ಯವನು ಸಹದೇವ ನುಡಿಯಲಿ
ಕತ್ಯಧಿಕಫಲ ಮೇಲೆ ಚಿಗಿಯಲು
ಮತ್ತೆ ಮುರರಿಪು ದ್ರುಪದಸುತೆ ಬಾಯೆಂದನುಚಿತದಲಿ ೩೧

ಶ್ಲೋಕ–
ಸುಂದರಂ ಪುರುಷಂ ದೃಷ್ಟ್ವಾ
ಪಿತರಂ ಭ್ರಾತರಂ ಸುತಂ
ಯೋನಿರ್ದ್ರವತಿ ನಾರೀಣಾಂ
ಸತ್ಯಂ ಬ್ರೂಮಿಹ ಕೇಶವ ॥೬॥

ಭಾವವಹ ಪುರುಷರನು ಕಾಣುತ
ಭಾವಿಸಲು ಪಿತ ಸುತರ ಅನುಜರ
ಠಾವಿನಲಿಯಾದರೆಯು ಯೋನಿರ್ದ್ರವಣ ಸತಿಯರಿಗೆ
ಭಾವದಲಿ ಮರೆವಿಡಿದು ನುಡಿಯಲಿ
ಕಾ ವಿಗಡ ಫಲವಡರದಿರುತಿರೆ
ದೇವ ನುಡಿದನು ವಂಚಿಸದೆ ನಿಶ್ಚಯವ ಹೇಳೆಂದ ೩೨

ಶ್ಲೋಕ–
ಪಂಚ ಮೇ ಪತಯಸ್ಸಂತಿ
ಷಷ್ಠಸ್ತು ಮಮ ರೋಚತೇ
ಪುರುಷಾಣಾಮಭಾವೇನ
ಸರ್ವಾ ನಾರ್ಯಾಃ ಪತಿವ್ರತಾಃ ॥೭॥

ಪತಿಗಳೀಶ್ವರನಾಜ್ಞೆಯಿಂದವೆ
ಯತಿಶಯದಲೈವರು ಮನಸ್ಸಿನ
ಮತದಲಾರಾಗಿಹುದು ಬೇರೊಂದಿಲ್ಲ ಚಿತ್ತದಲಿ
ಪೃಥಿವಿಯಲಿ ಪರಪುರುಷರನು ದು
ರ್ಮತಿಯೊಳೊಡಬಡುವವಳು ಸತಿಯೇ
ಸತತ ಕರುಣಾಕರಯೆನಲು ಫಲ ಠಾವನಡರಿದುದು ೩೩

ಹರುಷ ಮಿಗೆ ಋಷಿಜನಕೆ ಧೌಮ್ಯನು
ಕರಗಳನು ನೆಗಹುತ ಯುಧಿಷ್ಠಿರ
ಧರಣಿಪತಿ ಕೇಳ್ ಕೃಷ್ಣನಿರೆ ನಿನಗಾವುದರಿದೆಂದು
ಇರದೆ ದೇವನ ಪಾದ ಪಂಕಜ
ಕೆರಗಿದುದು ಮುನಿನಿಕರ ಬುಧಜನ
ನಿರತ ಪರಮಾನಂದವಿದ್ದೈದಿದರು ತದ್ವನವ ೩೪

ಮುನಿಪ ಕಣ್ವನು ಕಣ್ದೆರೆದು ಪರ
ಮನನು ಜಾನಿಸಿ ಕರವನರಳಿಚ
ಲೊನದು ಬಿದ್ದುದು ಪಣ್ಣು ಕಂಡನು ನಗುತ ಮನದೊಳಗೆ
ವನಜನಾಭನ ತಂತ್ರವಿದು ಪಾ
ವನ ಸುರೂಪನ ನೋಳ್ಪೆನೆಂದಾ
ಮುನಿಪ ಫಲಸಹ ಬಂದು ಕಂಡನು ಕೃಷ್ಣ ಪಾಂಡವರ ೩೫

ಇದಿರೊಳಿರಿಸಿದನಾ ಫಲವ ಸಂ
ಮುದದಿ ಹೊಂಪುಳಿಯೋಗಿ ಮುನಿಯಾ
ಪದುಮನಾಭಂಗೆರಗಿ ತೆಗಿ ನೀ ಫಲವನೆಂದೆನಲು
ಮದನಪಿತ ನಸನಗುತ ಮುನಿಪನ
ಹದುಳ ಮಿಗೆ ಸೈಪಿಟ್ಟು ನೆಗಹಿದ
ನುದಿತ ಫಲವನು ಹಂಚ ಹೇಳಿದನಾ ನೃಪಾಲಂಗೆ ೩೬

ಬರಿಸಿ ಋಷಿಗಳನವರವರ ತರ
ವರಿದು ಕೊಡಿಸಿದನುಳಿದುದನು ಭೂ
ಸುರ ಸಹೋದರರಿಂಗೆ ಮುನಿಸತಿಯರಿಗೆ ದ್ರೌಪದಿಗೆ
ಮುರಹರಗೆ ತನ್ಮುನಿಪ ಕಣ್ವಂ
ಗಿರಿಸಿ ಕೈವೀಸಿದೊಡೆ ಫಲವನು
ಹರುಷ ಮಿಗೆ ಭಂಜಿಸಿತು ಭೂಪತಿ ಕೇಳು ಕೌತುಕವ ೩೭

ಪಾರಣೆಯನುರೆ ಮಾಡಿ ಮುನಿಪ ಮ
ಹೀರಮಣನನು ಬೀಳುಕೊಟ್ಟನು
ದಾರ ಲಕ್ಷ್ಮೀಕಾಂತನನು ಬೀಳ್ಕೊಂಡು ಮತ್ತೊಂದು
ಸಾರವಹ ಸುಸ್ಥಾನಕೈದಿದ
ನಾರು ಭಾವಿಸಬಲ್ಲರಾ ಮುರ
ವೈರಿಯನುಪಮ ಮಹಿಮೆಗಳ ಭೂಪಾಲ ಕೇಳೆಂದ ೩೮

ದೇವ ನಿಮ್ಮಡಿಯಂಘ್ರಿ ಕಮಲವ
ನಾವ ನೆನೆವನವಂಗೆ ಜಪತಪ
ಸಾವು ಹುಟ್ಟಿಲ್ಲೆಂಬುದೈ ವರವೇದ ಶಾಸ್ತ್ರಗಳು
ನಾವಲೇ ಕೃತಕೃತ್ಯರಿಂದೀ
ದೇವ ಸಾಕ್ಷಾತ್ಕಾರ ದರ್ಶನ
ಭಾವವೋಯಿದು ನಮಗೆನುತ ಹೊಗಳಿದನು ಸಹದೇವ ೩೯

ಹರಿಯೊಲಿದು ವೈದಡವಿಯೈವರ
ತರುಣಿಯನು ಸಂತೈಸಿಯಾ ಮುನಿ
ವರರನುಪಚರಿಸಿದನು ಬುದ್ಧಿಯನೊರೆದು ಧರ್ಮಜಗೆ
ಉರುತರೋತ್ತರ ಸಿದ್ಧಿ ನಿಮಗಿ
ನ್ನಿರದೆ ಫಲಿಸುವದೆಂದು ಸುಚಿಸಿ
ಮರಳಿ ಶನ್ನಯ ಪುರಿಗೆ ಗಮನೋದ್ಯೋಗಮನನಾವ ೪೦

ಬಂದನಾ ಭೂಪತಿ ಮುರಾಂತಕ
ನಂದಣದ ಬಲ ದೆಸೆಯುಲನಿಲಜ
ಮುಂದೆ ವಾಮದಿ ಪಾರ್ಥಯಮಳ ದ್ರೌಪದಾದೇವಿ
ಹಿಂದೆ ಬರೆ ಕಿರಿದೆಡೆಯಲಲ್ಲಿಯೆ
ನಿಂದು ಕಳುರುಹಿದನೆಲ್ಲರನು ಗೋ
ವಿಂದನೇರಿದ ರಥವ ಗದುಗಿನ ವೀರನಾರಯಣ ೪೧

ನಾಲ್ಕನೆಯ ಸಂಧಿ

ಸೂ. ಭಜಿಸಿದನು ನರನಿಂದ್ರಕೀಲದೊ
ಳಜ ಸುರಾರ್ಚಿತ ಚರಣ ಕಮಲನ
ತ್ರಿಜಗದಧಿಪತಿಯನು ಮಹಾನಟರಾಯಧೂರ್ಜಟಿಯ

ಕೇಳು ಜನಮೇಜಯ ಧರಿತ್ರೀ
ಪಾಲ ಪಾಂಡು ಕುಮಾರರಟವಿಯ
ಪಾಳಿಯಲಿ ಪರುಠವಿಸಿದರು ಪದಯುಗ ಪರಿಭ್ರಮವ
ಲೋಲಲೋಚನೆ ಸಹಿತ ತತ್ಕುಲ
ಶೈಲದಲಿ ತದ್ವಿಪಿನದಲಿ ತ
ತ್ಕೂಲವತಿಗಳ ತೀರದಲಿ ತೊಳಲಿದರು ಬೇಸರದೆ ೧

ಫಳ ಮೃಗಾವಳಿ ಸವೆದುದಿನ್ನೀ
ಹಳುವು ಸಾಕಿನ್ನೊಂದಾರಣ್ಯ
ಸ್ಥಳವ ನೋಡಲಿ ಕಟಕ ನಡೆಯಲಿ ವಿಪ್ರಸಂಕುಲದ
ಸುಲಭವೀ ವನವೆಂದು ತಮ್ಮೊಳು
ತಿಳಿದು ಪಾರ್ಥ ಯುಧಿಷ್ಠಿರರು ಮುನಿ
ಕುಲ ಸಹಿತ ನಲವಿಂದ ಹೊಕ್ಕರು ದ್ವೈತಕಾನನವ ೨

ಅರಸ ಕಳುಹಿದ ದೂತನಾ ಗಜ
ಪುರವ ಹೊಕ್ಕು ತದೀಯ ವಾರ್ತಾ
ಭರದ ವಿವರವನರಿದು ಬಂದನು ಕಂಡನವನಿಪನ
ಕುರುನೃಪಾಲನ ಮಂದವನಾತನ
ಸಿರಿಯನಾತನ ಬಲುಹನಾತನ
ಪರಿಯನರುಹಿದನಬುಜಮುಖಿ ಪವನಜರು ಕಳವಳಿಸೆ ೩

ಮೂದಲಿಸಿದಳು ದ್ರುಪದ ತನುಜೆ ವೃ
ಕೋದರನನರ್ಜುನನವನಿಪ
ನಾದಿಯಾದೈವರನು ಕೌರವನೃಪನ ಪತಿಕರಿಸಿ
ಆದೊಡಿದೆ ಕುರುರಾಜ ವಂಶ
ಚ್ಛೇದ ಧೀರ ಕುಠಾರವೆನುತ ವೃ
ಕೋದರನು ತೂಗಿದನು ಗದೆಯನು ಗಾಢಕೋಪದಲಿ ೪

ಏಕಿದೇಕೆ ವೃಥಾ ನಿಶಾಟ
ವ್ಯಾಕರಣ ಪಾಂಡಿತ್ಯ ಪಕಟ ವಿ
ವೇಕ ರಹಿತನೆ ನೀ ವೃಕೋದರ ದ್ರುಪದ ಸುತೆಯಂತೆ
ಸಾಕು ಸಾಕೈ ತಮ್ಮ ಸತ್ಯವೆ
ಸಾಕು ನಮಗೆ ಮದೀಯ ಪುಣ್ಯ
ಶ್ಲೋಕತೆಯನುಳುಹೆಂದು ಗಲ್ಲವ ಹಿಡಿದನನಿಲಜನ ೫

ಅರಸಿ ನಿನ್ನಯ ಶೋಕವಹ್ನಿಯೊ
ಳುರಿವುದರಿನೃಪಜಲಧಿ ಕೇಳಂ
ಬುರುಹಲೋಚನೆ ನಿನ್ನ ಲೋಚನವಾರಿ ಪೂರದಲಿ
ಕುರುನೃಪಾಲ ಸಿರಿಯ ಶೋಕ
ಸ್ಫುರದನಲನುಜ್ವಲಿಸುವುದು ರಿಪು
ವಿರಚಿತದ ವಿಪರೀತಕಿದು ವಿಪರೀತವಹುದೆಂದ ೬

ಆ ಸಮಯದಲಿ ಬಂದನಗ್ಗದ
ಭೂಸುರ ಶ್ರೀಕಂಠನೋ ಪ
ದ್ಮಾಸನನ ಪಲ್ಲಟವೊ ಕಮಲಾಂಬಕನ ಚುಂಬಕವೊ
ಭಾಸುರ ಕ್ರತುಶತದ ರೂಪ ವಿ
ಳಾಸವೊ ಶ್ರುತಿಕೋಟಿ ಕನ್ಯಾ
ವಾಸಭವನವೊ ದೇವ ವೇದವ್ಯಾಸ ಮುನಿರಾಯ ೭

ಹಾ ಮಹಾ ದೇವಾಯಿದಾರು ಮ
ಹಾ ಮುನೀಶ್ವರರೆನುತ ಮುನಿಪ
ಸ್ತೋಮವೆದ್ದುದು ಧರ್ಮನಂದನನವರಿಗಿದಿರಾಗಿ
ಪ್ರೇಮ ಪುಳಕದ ನಯನ ಸಲಿಲದ
ರೋಮಹರ್ಷದ ಸತ್ಯಭಾವದ
ಭೂಮಿಪತಿ ಮೈಯಿಕ್ಕಿದನು ಮುನಿವರನ ಚರಣದಲಿ ೮

ವಿವಿಧ ಮುನಿಗಳ ಗೋತ್ರನಾಮ
ಪ್ರವರ ಸಹಿತಭಿವಾದ ಕರ್ಮೋ
ತ್ಸವವ ಕೈಕೊಳುತನಿಬರನು ಮನ್ನಿಸಿದನುಚಿತದಲಿ
ಯುವತಿ ಪದಕೆರಗಿದೊಡೆ 'ಭೂಯಾತ್
ತವ ಮನೋರಥ'ವೆನುತ ನಸುನಗು
ತವನಿಪಾಲನ ಪರ್ಣಶಾಲೆಗೆ ಮುನಿಪನೈತಂದ ೯

ಇದೆ ಪವಿತ್ರ ಪಲಾಶ ಪತ್ರದ
ಲುದಕವರ್ಘ್ಯಾಚಮನ ಪಾದ್ಯ
ಕ್ಕಿದೆ ವಿಮಳ ದರ್ಭೋಪರಚಿತಾಸನ ವಿಳಾಸದಲಿ
ಇದನು ಕಾಂಚನ ಪಾತ್ರಜಲವೆಂ
ದಿದು ವರಾಸನವೆಂದು ಕೈಕೊಂ
ಬುದು ಯಥಾ ಸಂಭವವದಲೆಂದನು ಧರ್ಮನಂದನನು ೧೦

ಈ ಪವಿತ್ರೋದಕವಲೇ ದೋ
ಷಾಪಹರ ದರ್ಭಾಸನದಲಿಂ
ದೀ ಪೃಥಿವಿ ಸರ್ವಾಧಿಪತ್ಯವು ಸೇರುವುದು ನಿನಗೆ
ಭೂಪಕೇಳೈ ಜೇನುನೊಣದ ಮ
ಧೂಪಚಯವವಕಿಲ್ಲಲೇ ಸ
ರ್ವಾಪಹಾರವು ಪರರಿಗಾ ಕೌರವನ ಸಿರಿಯೆಂದ ೧೧

ಒಡಲು ಬೀಳಲಿ ಮೇಣು ತಮ್ಮದಿ
ರಡವಿಯಲಿ ಹಾಯಿಕ್ಕಿ ಹೋಗಲಿ
ಮಡದಿ ಮುನಿಯಲಿ ಬಸಿದು ಬೀಳಲಿ ಧರಣಿ ಕುರುಪತಿಗೆ
ಎಡೆಯಲುಳಿವಿವರಾಗು ಹೋಗಿನ
ಗೊಡವೆಯೆನಗಿಲ್ಲೆನ್ನ ಸತ್ಯದ
ನುಡಿಗೆ ಹಾದರವಿಲ್ಲದಂತಿರೆ ಕರುಣಿಸುವುದೆಂದ ೧೨

ಬಾಧೆಯುಂಟೇ ನಿನ್ನ ಸತ್ಯಕೆ
ಸಾಧಿಸುವುದವಧಿಯನು ನಿನ್ನ ವಿ
ರೋಧಿಗಳಿಗೆ ನಿವಾಸವಹುದು ಕೃತಾಂತಲೋಕದಲಿ
ಆಧಿಪತ್ಯ ಭೃಮಿತರಲಿ ರಾ
ಜ್ಯಾದಿಯಲಿ ಕಡೆಗೊಂಡಿರಖಿಲ ನಿ
ರೋಧವನು ಕಡನನು ಸವೃದ್ಧಿಕವಾಗಿ ಕೊಡಿಯೆಂದ ೧೩

ಆವುದರಿದಿವರಿಗೆ ಭವತ್ಕರು
ಣಾವಲೋಕನವುಂಟು ಪುನರಪಿ
ದೇವಕೀ ನಂದನನಲೊದಗುವ ಮೇಲು ನೋಟದಲಿ
ಈ ವಿಪತ್ತೇಸರದು ಪಾಂಡವ
ಜೀವಿಗಳು ನೀವಿಬ್ಬರಿರಲೆಂ
ದಾ ವಿಭಾಂಡಕ ಶೌನಕಾದಿಗಳೆಂದರಾ ಮುನಿಗೆ ೧೪

ಕರೆಸಿ ದ್ರುಪದಾತ್ಮಜೆಯ ಕಂಬನಿ
ಯೊರತೆಯಾರಲು ನುಡಿದನಾಕೆಯ
ಕರಣದಲಿ ಕಿವಿಗೊಂಡ ಕಳಕಳವನು ವಿಭಾಡಿಸಿದ
ಧರಣಿಪತಿಗೇಕಾಂತ ಭವನದೊ
ಳೊರೆದನೀಶ್ವರ ವಿಷಯ ಮಂತ್ರಾ
ಕ್ಷರವನಂಗೋಪಾಂಗ ಮುದ್ರಾಶಕ್ತಿಗಳು ಸಹಿತ ೧೫

ಇದು ಮಹೇಶರ ಶೋಕಹರವಿಂ
ತಿದು ವಿರೋಧಿಬಲ ಪ್ರಭಂಜನ
ವಿದು ಸಕಲ ಪುರುಷಾರ್ಥ ಸಾಧನವಖಿಳ ದುರಿತಹರ
ಇದು ಮಹಾಧಿವ್ಯಾಧಿಹರವಿಂ
ತಿದನು ನೀ ಕೊಳ್ಳರ್ಜುನಂಗೊರೆ
ವುದು ರಹಸ್ಯದೊಳೆಂದು ಮುನಿ ಕರುಣಿಸಿದನರಸಂಗೆ ೧೬

ಪಾರ್ಥನೈದುವುದಿಂದ್ರ ಕೀಲದೊ
ಳರ್ಥಿಸಲಿ ಶಂಕರನನಖಿಳ
ಸ್ವಾರ್ಥ ಸಿದ್ಧಿಗೆ ಬೀಜವಿದು ಬೇರೊಂದು ಬಯಸದಿರು
ವ್ಯರ್ಥರವದಿರು ನಿನ್ನ ಹಗೆಯು ಕ
ದರ್ಥನದೊಳಿನೇನು ಜಗಕೆ ಸ
ಮರ್ಥನೊಬ್ಬನೆ ಶಂಭು ಕೃಪೆ ಮಾಡುವನು ನಿನಗೆಂದ ೧೭

ಇಂದುಮುಖಿಯನು ಭೀಮನನು ಯಮ
ನಂದನನನರ್ಜುನನ ಯಮಳರ
ನಂದು ಕೊಂಡಾಡಿದನು ಮೈದಡವಿದನು ಮೋಹದಲಿ
ಬಂದು ಸಂದಣಿಸಿದ ಮುನಿ ದ್ವಿಜ
ವೃಂದವನು ಮನ್ನಿಸಿ ನಿಜಾಶ್ರಮ
ಮಂದಿರಕೆ ಮುದದಿಂದ ಬಿಜಯಂಗೈದನಾ ಮುನಿಪ ೧೮

ಅರಸ ಕೇಳೈ ಮುನಿಪನತ್ತಲು
ಸರಿದನಿತ್ತಲು ಪಾರ್ಥನನು ನೃಪ
ಕರೆದು ವೇದವ್ಯಾಸನಿತ್ತುಪದೇಶ ವಿಸ್ತರವ
ಅರುಹಿದನು ಕೈಲಾಸ ಸೀಮಾ
ವರುಷದಲ್ಲಿಹುದಿಂದ್ರ ಕೀಲದ
ಗಿರಿ ಮಹೇಶ ಕ್ಷೇತ್ರವಲ್ಲಿಗೆ ಹೋಗು ನೀನೆಂದ ೧೯

ಅಲ್ಲಿ ಭಜಿಸುವದಮಳ ಗಿರಿಜಾ
ವಲ್ಲಭನನಾಮ್ನಾಯ ಜಿಹ್ವೆಗೆ
ದುರ್ಲಭನನಧಿ ದೈವವನು ಬ್ರಹ್ಮೇಂದ್ರ ಭಾಸ್ಕರರ
ಬಲ್ಲೆನೆಂಬರ ಬಹಳ ಗರ್ವವ
ಘಲ್ಲಿಸುವ ಗಡ ತನ್ನ ಭಕ್ತರು
ಬಲ್ಲಿದರು ತನಗೆಂಬ ಬೋಳೆಯರರಸನಿಹನೆಂದ ೨೦

ಏಳು ನೀ ಪ್ರತ್ಯೂಷದಲಿ ಶಶಿ
ಮೌಳಿ ಮೈದೋರಲಿ ತದೀಯ ಶ
ರಾಳಿಗಳು ಸಿದ್ಧಿಸಲಿ ಸೇರಲಿ ಶಿವನ ಕೃಪೆ ನಿನಗೆ
ಸೋಲದಿರು ಸುರಸತಿಯರಿಗೆ ಸ
ಮ್ಮೇಳವಾಗದಿರವರೊಡನೆ ಕೈ
ಮೇಳವಿಸುವುದು ಕಾಮವೈರಿಯ ಚರಣಕಮಲದಲಿ ೨೧

ಮುಗ್ಗದಿರು ಮಾಯೆಯಲಿ ಮದದಲಿ
ನೆಗ್ಗದಿರು ರೋಷದ ವಿಡಂಬದ
ಲಗ್ಗಳೆಯತನದಿಂದಹಂಕೃತಿ ಭರದಿ ಮೆರೆಯದಿರು
ಅಗ್ಗಸದಿರಾತ್ಮನನು ಲೋಭದೊ
ಳೊಗ್ಗದಿರು ಲಘುವಾಗದಿರು ಮಿಗೆ
ಹಿಗ್ಗದಿರು ಹೊಗಳಿಕೆಗೆ ಮನದಲಿ ಪಾರ್ಥ ಕೇಳೆಂದ ೨೨

ಆಡದಿರಸತ್ಯವನು ಕಪಟವ
ಮಾಡದಿರು ನಾಸ್ತಿಕರೊಡನೆ ಮಾ
ತಾಡದಿರು ಕೆಳೆಗೊಳ್ಳದಿರು ವಿಶ್ವಾಸಘಾತಕರ
ಖೋಡಿಗಳೆಯದಿರಾರುವನು ಮೈ
ಗೂಡದಿರು ಪರವಧುವಿನಲಿ ರಣ
ಖೇಡನಾಗದಿರೆಂದು ನುಡಿದನು ನೃಪತಿಯರ್ಜುನಗೆ ೨೩

ಕ್ರೂರರಿಗೆ ಶಠರಿಗೆ ವೃಥಾಹಂ
ಕಾರಿಗಳಿಗತಿ ಕುಟಿಲರಿಗೆಯುಪ
ಕಾರಿಯಪಘಾತರಿಗೆ ಭೂತದ್ರೋಹಿ ಜೀವರಿಗೆ
ಜಾರರಿಗೆ ಜಡರಿಗೆ ನಿಕೃಷ್ಟಾ
ಚಾರರಿಗೆ ಪಿಸುಣರಿಗೆ ಧರ್ಮವಿ
ದೂರರಿಗೆ ಕಲಿಪಾರ್ಥ ಕೇಳ್ ಪರಲೋಕವಿಲ್ಲೆಂದ ೨೪

ಭ್ರಾತೃ ಮಿತ್ರ ವಿರೋಧಿಕಗೆ ಪಿತೃ
ಮಾತೃವಿಘಾತಿಗೆ ಖಳನಿಗುತ್ತಮ
ಜಾತಿನಾಶಕಂಗೆ ವರ್ಣಾಶ್ರಮ ವಿದೂಷಕಗೆ
ಜಾತಿಸಂಕರಕಾರಗಾ ಕ್ರೋ
ಧಾತಿರೇಕಗೆ ಗಾಢ ಗರ್ವಿಗೆ
ಭೂತವೈರಿಗೆ ಪಾರ್ಥ ಕೇಳ್ ಪರಲೋಕವಿಲ್ಲೆಂದ ೨೫

ಸ್ವಾಮಿಕಾರ್ಯ ವಿಘಾತಕಂಗತಿ
ಕಾಮುಕಗೆ ಮಿಥ್ಯಾಪವಾದಿಗೆ
ಭೂಮಿದೇವ ದ್ವೇಷಿಗತ್ಯಾಶಿಗೆ ಬಕವೃತಿಗೆ
ಗ್ರಾಮಣಿಗೆ ಪಾಷಂಡಗಾತ್ಮ ವಿ
ರಾಮಕಾರಿಗೆ ಕೂಟಸಾಕ್ಷಿಗೆ
ನಾಮಧಾರಿಗೆ ಪಾರ್ಥ ಕೇಳ್ ಪರಲೋಕವಿಲ್ಲೆಂದ ೨೬

ಅದರಿನಾವಂಗುಪಹತಿಯ ಮಾ
ಡದಿರು ಸಚರಾಚರದ ಚೈತ
ನ್ಯದಲಿ ನಿನ್ನನೆ ಬೆರೆಸಿ ಕಾಬುದು ನಿನ್ನ ತನುವೆಂದು
ಬೆದರದಿರು ಬಲುತಪಕೆ ಶೂಲಿಯ
ಪದಯುಗವ ಮರೆಯದಿರು ಹರಿಯನು
ಹೃದಯದಲಿ ಪಲ್ಲಟಿಸದಿರು ಸುಖಿಯಾಗು ಹೋಗೆಂದ ೨೭

ಕರುಣಿಸಲಿ ಕಾಮಾರಿ ಕೃಪೆಯಿಂ
ವರ ಮಹಾಸ್ತ್ರವನಿಂದ್ರ ಯಮ ಭಾ
ಸ್ಕರ ಹುತಾಶನ ನಿರುತಿ ವರುಣ ಕುಬೇರ ಮಾರುತರು
ಸುರರು ವಸುಗಳು ಸಿದ್ಧ ವಿದ್ಯಾ
ಧರ ಮಹೋರಗ ಯಕ್ಷ ಮನು ಕಿಂ
ಪುರುಷರೀಯಲಿ ನಿನಗೆ ವಿಮಳ ಸ್ವಸ್ತಿವಾಚನವ ೨೮

ಎನೆ ಹಸಾದವೆನುತ್ತೆ ಯಮ ನಂ
ದನಗೆ ಭೀಮಂಗೆರಗಿದನು ಮುನಿ
ಜನಕೆ ಮೈಯಿಕ್ಕಿದನು ಮುಳುಗಿದನಕ್ಷತೌಘದಲಿ
ವನಜಮುಖಿ ಮುನಿ ವಧುಗಳಾಶೀ
ರ್ವಿನುತ ದಧಿ ದೂರ್ವಾಕ್ಷತೆಯನು
ಬ್ಬಿನಲಿ ಕೈಕೊಳುತನಿಬರನು ಮನ್ನಿಸಿದನುಚಿತದಲಿ ೨೯

ನೆನೆಯದಿರು ತನುಸುಖವ ಮನದಲಿ
ನೆನೆ ವಿರೋಧಿಯ ಸಿರಿಯನೆನ್ನಯ
ಘನತರದ ಪರಿಭವವ ನೆನೆ ನಿಮ್ಮಗ್ರಜರ ನುಡಿಯ
ಮುನಿವರನ ಮಂತ್ರೋಪದೇಶವ
ನೆನೆವುದಭವನ ಚರಣ ಕಮಲವ
ನೆನುತ ದುರುಪದಿಯೆರಗಿದಳು ಪಾರ್ಥನ ಪದಾಬ್ಜದಲಿ ೩೦

ಹರನ ಚರಣವ ಭಜಿಸುವೆನು ದು
ರ್ಧರ ತಪೋನಿಷ್ಠೆಯಲಿ ಕೇಳೆಲೆ
ತರುಣಿ ಪಾಶುಪತಾಸ್ತ್ರವಾದಿಯ ದಿವ್ಯಮಾರ್ಗಣವ
ಪುರಹರನ ಕೃಪೆಯಿಂದ ಪಡೆದಾ
ನರಿಗಳನು ಸಂಹರಿಸಿ ನಿನ್ನಯ
ಪರಿಭವಾಗ್ನಿಯ ನಂದಿಸುವೆ ನಿಲ್ಲೆಂದನಾ ಪಾರ್ಥ ೩೧

ಬಿಗಿದ ಬತ್ತಳಿಕೆಯನು ಹೊನ್ನಾ
ಯುಗದ ಖಡುಗ ಕಠಾರಿ ಚಾಪವ
ತೆಗೆದನಳವಡೆಗಟ್ಟಿ ಬದ್ದುಗೆದಾರ ಗೊಂಡೆಯವ
ದುಗುಡ ಹರುಷದ ಮುಗಿಲ ತಲೆಯೊ
ತ್ತುಗಳಿಗಿಟ್ಟೆಡೆಯಾಗಿ ಗುಣ ಮೌ
ಳಿಗಳ ಮಣಿ ಕಲಿಪಾರ್ಥ ಬೀಳ್ಕೊಂಡನು ನಿಜಾಗ್ರಜನ ೩೨

ಹರಡೆ ವಾಮದೊಳುಲಿಯೆ ಮಧುರ
ಸ್ವರದಲಪಸವ್ಯದಲಿ ಹಸುಬನ
ಸರ ಸಮಾಹಿತವಾಗೆ ಸೂರ್ಯೋದಯದ ಸಮಯದಲಿ
ಹರಿಣ ಭಾರದ್ವಾಜನುಡಿಕೆಯ
ಸರಟ ನಕುಲನ ತಿದ್ದುಗಳ ಕು
ಕ್ಕುರನ ತಾಳಿನ ಶಕುನವನು ಕೈಕೊಳುತ ನಡೆತಂದ ೩೩

ನೀಲಕಂಠನ ಮನದ ಬಯಕೆಗೆ
ನೀಲಕಂಠನೆ ಬಲಕೆ ಬಂದುದು
ಮೇಲುಪೋಗಿನ ಸಿದ್ಧಿ ದೈತ್ಯಾಂತಕನ ಬುದ್ಧಿಯಲಿ
ಕಾಲಗತಿಯಲಿ ಮೇಲೆ ಪರರಿಗ
ಕಾಲಗತಿಯನು ಕಾಬೆನೈಸಲೆ
ಶೂಲಧರನೇ ಬಲ್ಲನೆನುತ್ತೈತಂದನಾ ಪಾರ್ಥ ೩೪

ಅರಸ ಕೇಳೈ ಬರುತ ಭಾರತ
ವರುಷವನು ದಾಂಟಿದನು ತಂಪಿನ
ಗಿರಿಯ ತಪ್ಪಲನಿಳಿದನಾ ಹರಿವರುಷ ಸೀಮೆಯಲಿ
ಬೆರಸಿದನು ಬಳಿಕುತ್ತರೋತ್ತರ
ಸರಣಿಯಲಿ ಸೈನಡೆದು ಹೊಕ್ಕನು
ಸುರರ ಸೇವ್ಯವನಿಂದ್ರಕೀಲ ಮಹಾ ವನಾಂತರವ ೩೫

ಗಿಳಿಯ ಮೃದು ಮಾತುಗಳ ಮರಿಗೋ
ಗಿಲೆಯ ಮಧುರ ಧ್ವನಿಯ ಹಂಸೆಯ
ಕಳರವದ ಮರಿ ನವಿಲ ಕೇಕಾ ರವದ ನಯಸರದ
ಮೆಲುದನಿಯ ಪಾರಿವದ ತುಂಬಿಯ
ಲಲಿತ ಗೀತದ ವನ ವನದ ಸಿರಿ ಬಗೆ
ಗೊಳಿಸಿತ್ತೈ ಪೂರ್ವಾಭಿಭಾಷಣದಲಿ ಧನಂಜಯನ ೩೬

ಸೊಂಪೆಸೆವ ಕೋಗಿಲೆಯ ಸರ ದೆಸೆ
ತಂಪೆಸೆವ ತಂಬೆಲರ ಹುವ್ವಿನ
ಜೊಂಪವನು ಜೊಂಪಿಸುವ ಮರಿದುಂಬಿಗಳ ಮೇಳವದ
ಪೆಂಪೊಗುವ ತಾವರೆಗೊಳಂಗಳ
ತಂಪಿನೊದವಿನ ವನದ ಸೊಗಸಿನ
ಸೊಂಪು ಸೆಳೆದುದು ಮನವನೀತನನರಸ ಕೇಳೆಂದ ೩೭

ಚಾರುತರ ಪರಿಪಕ್ವ ನವ ಖ
ಖರ್ಜೂರ ರಸಧಾರಾ ಪ್ರವಾಹ ಮ
ನೋರವೇಕ್ಷು ವಿಭೇದ ವಿದ್ರುಮರಸದ ದಾಳಿಂಬ
ಭೂರಿ ಜಂಬು ಮಧೂಕ ಪನಸ
ಸ್ಫಾರ ರಸಪೂರಾನುಕಲಿತ ವಿ
ಹಾರ ಸುರಮಹಿಳಾಭಿರಂಜಿಸುವಖಿಳ ವನಭೂಮಿ ೩೮

ವಿಲಸದಭ್ರದಲಿಹ ಮಹಾ ತರು
ಕುಲದಿನಮಾರನದೀಕ್ಷ ಸಂಧಮ
ಫಲರಸದ ಸವಿಗಳಲಿ ದಿಕ್ಪಾಲಕಹೋನ್ನತಿಯ
ಸುಳಿವ ಪರಿಮಳ ಪವನನಿಂ ಕಂ
ಗೊಳಿಸಿತರ್ಜುನ ಕಾಮ್ಯ ಸಿದ್ಧಿ
ಸ್ಥಳದೊಳಂತರ್ನಿಘನ ಕಾನನವರಸ ಕೇಳೆಂದ ೩೯

ಇಲ್ಲಿ ನಿಲ್ಲರ್ಜುನ ತಪೋವನ
ಕಿಲ್ಲಿ ನೆಲೆ ಶ್ರುತಿಯುವತಿ ಸೂಸುವ
ಚೆಲ್ಲೆಗಂಗಳ ಮೊನೆಗೆ ಮಿಾಸಲುಗುಡದ ಮೈಸಿರಿಯ
ದುರ್ಲಲಿತದಷ್ಟಾಂಗ ಯೋಗದ
ಕೊಲ್ಲಣಿಗೆಯಲಿ ಕೂಡದಪ್ರತಿ
ಮಲ್ಲ ಶಿವನ ಕ್ಷೇತ್ರವಿದೆಯೆಂದುದು ನಭೋನಿನದ ೪೦

ಧರಣಿಪನ ಬೀಳ್ಕೊಂಡು ಮಾರ್ಗಾಂ
ತರದೊಳಾರಡಿಗೈದು ಹೊಕ್ಕನು
ಹರನ ಕರುಣಾ ಸಿದ್ಧಿ ಸಾಧನವೆನಿಪ ಗಿರಿವನವ
ಮರುದಿವಸದುದಯದಲಿ ಮಿಂದನು
ಸರಸಿಯಲಿ ಸಂಧ್ಯಾಭಿಮುಖದಲಿ
ತರಣಿಗರ್ಘ್ಯವನಿತ್ತು ದೇವವ್ರಜಕೆ ಕೈಮುಗಿದ ೪೧

ವಿನುತ ಶಾಂಭವ ಮಂತ್ರಜಪ ಸಂ
ಜನಿತ ನಿರ್ಮಲ ಭಾವಶುದ್ಧಿಯ
ಮನದೊಳರ್ಜುನನೆತ್ತಿ ನಿಂದನು ದೀರ್ಘ ಬಾಹುಗಳ
ನೆನಹು ನೆಮ್ಮಿತು ಶಿವನನಿತರದ
ನನೆಕೊನೆಯ ತೆರಳಿಕೆಯ ತೊಡಚೆಯ
ಮನದ ಸಂಚಲವೀಚುಪೋದುದು ಕಲಿ ಧನಂಜಯನ ೪೨

ಮುಗುಳುಗಂಗಳ ಮೇಲು ಗುಡಿದೋ
ಳುಗಳ ಮಿಡುಕುವ ತುಟಿಯ ತುದಿಗಾ
ಲುಗಳ ಹೊರಿಗೆಯ ತಪಬ ನಿರಿಗೆಯ ನಿಷ್ಪ್ರಕಂಪನದ
ಬಿಗಿದ ಬಿಲ್ಲಿನ ಬೆನ್ನ ಬತ್ತಳಿ
ಕೆಗಳ ಕಿಗ್ಗಟ್ಟಿನ ಕಠಾರಿಯ
ಹೆಗಲಸಾಯುಧ ಹೊಸ ತಪಸಿ ತೊಡಗಿದನು ಬಲುತಪವ ೪೩

ಅರಸ ಕೇಳೈ ವಿಪ್ರವೇಷವ
ಧರಿಸಿ ಧರೆಗಿಳಿದನು ಸುರೇಶ್ವರ
ತರಹರಿಸದೀ ಮಾತನೆಂದನು ನಿಜಕುಮಾರಂಗೆ
ಮರಿಚ ಮೌಕ್ತಿಕ ಲೋಹ ಹೇಮಾ
ಭರಣ ಚರ್ಮ ದುಕೂಲ ಮಿಳಿ ಹಾ
ವರಿಯ ಹೂವಿನ ದಂಡೆಗೇಕನಿವಾಸವೇಕೆಂದ ೪೪

ಆವ ಸೇರಿಕೆ ಜಪಕೆ ಚಾಪ ಶ
ರಾವಳಿಗೆ ಶಮೆ ದಮೆಗೆ ಖಡ್ಗಕಿ
ದಾವ ಸಮ್ಮೇಳನ ವಿಭೂತಿಗೆ ಕವಚ ಸೀಸಕಕೆ
ಆವುದಿದರಭಿಧಾನ ತಪವೋ
ಡಾವರಿಗ ವಿದ್ಯಾ ಸಮಾಧಿಯೊ
ನೀವಿದೆಂತಹ ಋಷಿಗಳೆಂಬುದನರಿಯೆ ನಾನೆಂದ ೪೫

ಕಂದೆರೆದು ನೋಡಿದನು ನೀವೇ
ನೆಂದರೆಯು ಹೃದಯಾಬ್ಜ ಪೀಠದ
ಲಿಂದುಮೌಳಿಯನಿರಿಸಿ ಮೆಚ್ಚಿಸುವೆನು ಸಮಾಧಿಯಲಿ
ಇಂದಿನೀ ಬಹಿರಂಗ ಚಿಹ್ನೆಯ
ಕುಂದು ಹೆಚ್ಚಿನಲೇನು ಫಲವೆನ
ಲಂದು ತಲೆದೂಗಿದನು ಸುರಪತಿ ತೋರಿದನು ನಿಜವ ೪೬

ಮಗನೆ ನಿನ್ನಯ ಮನದ ನಿಷ್ಠೆಗೆ
ಸೊಗಸಿದೆನು ಪಿರಿದಾಗಿ ಹರನಿ
ಲ್ಲಿಗೆ ಬರಲಿ ಕರುಣಿಸಲಿ ನಿನ್ನ ಮನೋಭಿವಾಂಛಿತವ
ಹಗೆಗೆ ಹರಿವಹುದೆಂದು ಸುರ ಮೌ
ಳಿಗಳ ಮಣಿ ಸರಿದನು ವಿಮಾನದ
ಲಗಧರನ ಮೈದುನನ ಮಹಿಮೆಯನಿನ್ನು ಕೇಳೆಂದ ೪೭

ಐದನೆಯ ಸಂಧಿ

ಸೂ. ಮುನಿನಿಕರ ಬಿನ್ನವಿಸೆ ಕರುಣಾ
ವನಧಿ ಶಂಭು ಕಿರಾತಮಯ ರೂ
ಪಿನಲಿ ಹೊಕ್ಕನು ವನದಲೆಚ್ಚನು ಮೂಕದಾನವನ

ಮರಳಿದನು ದೇವೇಂದ್ರನತ್ತಲು
ಹರನೊಡನೆ ಹೊರೆಯೇರಿದಂತಃ
ಕರಣ ಹಿಗ್ಗಿತು ಮುದುಗಿದನು ಬಹಿರಂಗ ಭಾವನೆಯ
ಧರಣಿ ಮೊದಲೆನೆ ಭೂತ ಪಂಚಕ
ಮರುತ ಪಂಚಕ ವಿಷಯವಿಂದ್ರಿಯ
ಕರಣವಿಪ್ಪತ್ತೈದು ತತ್ವಾತ್ಮಕನ ಚಿಂತಿಸಿದ ೧

ಮೇಲೆ ವಿದ್ಯಾರಾಗ ನೀತಿಯ
ಕಾಲಕ ಲಯಾತ್ಮಕನ ಮಾಯೆಯ
ಮೇಲುಪೋಗಿನ ಶುದ್ಧವಿದ್ಯಾರೂಪನೀಶ್ವರನ
ಕೇಳು ನೃಪತಿ ಸದಾಶಿವನನು
ತ್ತಾಳ ಶಕ್ತಿಯನಖಿಲ ತತ್ವದ
ಮೌಳಿಮಣಿಯನಖಂಡ ಚಿನುಮಯ ಶಿವನ ಚಿಂತಿಸಿದ ೨

ಮೂರು ದಿನಕೊಪ್ಪೊಮ್ಮೆ ಫಲದಾ
ಹಾರದಲಿ ನೂಕಿದನು ತಿಂಗಳ
ನಾರು ದಿವಸಕೆ ಫಲವಗೊಂಡನು ತಿಂಗಳೆರಡರಲಿ
ಮೂರು ತಿಂಗಳ ಕಳೆದನಿಂತೀ
ರಾರು ದಿವಸಕೆ ಕಂದ ಮೂಲಾ
ಹಾರದಲಿ ತರಗೆಲೆಯಲಿರ್ದನು ನಾಲ್ಕು ಮಾಸದಲಿ ೩

ಬಳಿಕ ಪವನಾಹಾರದಲಿ ನಿ
ಸ್ಖಲಿತ ಶಿವಪದ ಭಕ್ತಿ ಸುಧೆಯಲಿ
ತಳಿತ ರೋಮಾಂಚನದ ಕಂದದ ಕುಂದದವಯವದ
ಥಳಥಳಿಸುವಾನನದ ಸತ್ವೋ
ಜ್ಜ್ವಲಿತ ಚಿತ್ತದ ಸುಪ್ರಭಾವದ
ಬಳವಿಗೆಯಲುತ್ಕೋಚವಾಯಿತು ತಪ ಧನಂಜಯನ ೪

ಯಮದಲುತ್ಸಾಹಿಸಿದು ನಿಯಮ
ಶ್ರಮವ ಗೆಲಿದನು ಶಂಭುವಿನ ಪದ
ಕಮಲ ಬಯಸಿಕೆಯಾದುದೆತ್ತಿದ ಜೀವ ಪರಮನಲಿ
ಭ್ರಮಿಸುವಿಂದ್ರಿಯ ಗುಣವನುಗಿದಾ
ಕ್ರಮಿಸಿ ಶಂಕರ ಭಾವದಲಿ ಸಂ
ಕ್ರಮಿಸಿ ಧರಿಸಿ ಸಮಾಧಿಯನು ತಳೆದಾತ್ಮಪರನಾದ ೫

ವಿಮಳಮತಿ ಕೇಳಿಂದ್ರಿಯಾರ್ಥ
ಭ್ರಮೆಯ ಜಾಗ್ರದವಸ್ಥೆಯಂತಃ
ಸ್ತಿಮಿರ ಕರಣ ಭ್ರಮೆಯಲುದಿತ ಸ್ವಪ್ನವೀಧಿಯಲಿ
ಗಮಿತ ತದ್ವಾಸನೆಯ ಬೀಜ
ಕ್ರಮ ಸುಷುಪ್ತ್ಯವಸ್ಥೆಯಲಿ ಸಂ
ಕ್ರಮಿಸದಗ್ಗದ ತುರ್ಯ ಶಿವನನು ಪಾರ್ಥ ಚಿಂತಿಸಿದ ೬

ತಾನೆ ಶಿವನೋ ಮೇಣು ಶಿವನ
ಧ್ಯಾನ ತನಗದ್ವೈತದನುಸಂ
ಧಾನವಿದು ಜವನಿಕೆಯೋ ಜೀವಾತುಮನ ಜಂಜಡಕೆ
ಧ್ಯಾನವೋ ಮೇಣ್ ಧ್ಯೈರ್ಯವೋ ತ
ದ್ಧ್ಯಾನ ಕರ್ತೃವೊ ತ್ರಿಪುಟಿರಹಿತನೊ
ತಾನು ಮೇಣೆನಲಾಯ್ತು ಚಿತ್ತದ ಶುದ್ಧಿಯರ್ಜುನನ ೭

ಮುನಿಯಿದೇನೈ ಚಿತ್ರವಾಯ್ತ
ರ್ಜುನನ ಚಿತ್ತದೊಳೇನು ತಾಮಸ
ಜನಿತ ಕರ್ಮವೊ ಶುದ್ಧ ತತ್ವಜ್ಞಾನ ಜಲಧಿಯಲಿ
ಮನ ಮುಳುಗಿ ಮುಗುಳೆದ್ದು ಶಿತಿ ಕಂ
ಠನಲಿ ಶಸ್ತ್ರಾಸ್ತ್ರವನು ಬೇಡಿದ
ನೆನಲು ಜನಮೇಜಯಗೆ ಮುನಿಯಿಂತೆಂದ ನಸುನಗುತ ೮

ಅರಸ ಕೇಳೈ ರಾಜಸಾಂತಃ
ಕರಣವದು ಕಾಮ್ಯೈಕ ಸಿದ್ಧಿ
ಸ್ಫುರಣೆಗೋಸುಗ ತಪವಲೇ ರಾಜ್ಯಾಭಿಲಾಷೆಯಲಿ
ಹರಚರಣನಿಕ್ಷಿಪ್ತ ಚೇತಃ
ಸ್ಫುರಣೆ ತತ್ಪರಿಯಂತ ಉಕ್ಕಿತು
ಪರಮವಸ್ತು ನಿಜಸ್ವಭಾವಕೆ ಚಿತ್ರವೇನೆಂದ ೯

ಮೇಲೆ ಮೇಲೀತನ ತಪೋಗ್ನಿ
ಜ್ವಾಲೆ ಜಡಿದುದು ತಡೆದುದಭ್ರ
ಸ್ಥಾಳಿಯಲಿ ಸೈವರಿನ ಸೂರ್ಯಾಚಂದ್ರಮ ಪ್ರಭೆಯ
ಢಾಳಿಸುವ ಪರಿಧೌತ ಮೌನ ಕ
ರಾಳ ತೇಜೋಗರ್ಭ ತಪ ಧೂ
ಮಾಳಿಯಲಿ ಮೇಘಾಳಿ ಮುಸಗಿದುದರಸ ಕೇಳೆಂದ ೧೦

ಆತನುಗ್ರ ತಪಃ ಪ್ರಭಾ ವಿ
ಖ್ಯಾತಿ ವಿಗಡಿಸಿತಖಿಳ ಲೋಕ
ವ್ರಾತವನು ಸೋತವನು ಕೌರವನೋ ಯುಧಿಷ್ಠಿರನೊ
ಈತನೀಶ್ವರಶಸ್ತ್ರವನು ಕೈ
ಯಾತುಕೊಂಡರೆ ಬಳಿಕ ರಿಪು ನೃಪ
ಜಾತವಿದಿರೇ ಕೇಳು ಜನಮೇಜಯ ಮಹೀಪಾಲ ೧೧

ಏನನೆಂಬೆನು ಪಾರ್ಥನುಗ್ರ ತ
ಪೋ ನಿದಾಘ ಜ್ವಾಲೆಯನು ಸಂ
ಧಾನವನು ತತ್ಪರಿಸರದ ಪಾವನ ತಪೋಧನರ
ಮೌನವುರೆ ಸೀದುದು ಜಪಾನು
ಷ್ಠಾನ ಬಿಡೆ ಬೆವರಿತು ಸಮಾಧಿ
ಧ್ಯಾನ ಸೀಕರಿಯಾಯ್ತು ಸಾರವಿಚಾರ ಶಮಸಹಿತ ೧೨

ಶ್ರುತಿಯ ಉಳಿ ತಗ್ಗಿತು ವಿವೇಕ
ಸ್ಥಿತಿಗೆ ಪಲ್ಲಟವಾದುದೀಶ್ವರ
ರೂಪವನು ಮುಚ್ಚಿದುದು ಮಾಯಾ ಮೋಹಮುದ್ರೆಯಲಿ
ಶಾಪಭೀತರಹಂ ಮಮತ್ವ ಕೃ
ತಾಪರಾಧರು ವಿಕೃತಗುಣ ಯ
ಜ್ಞೋಪವೀತರು ಮುಸಗಿದರು ಮುನಿಗಳು ತಪೋವನದ ೧೩

ಹಳಿವ ಹಾವಸೆ ಮನದೊಳಿದ್ದರು
ಕೆಲರು ಕೆಲರೆಡೆಯಾಡುತಿರ್ದರು
ತಿಳಿವು ಮರವೆಗಳಲ್ಲಿ ಕೆಲರುಪಶಾಂತಿ ಭಾವದಲಿ
ಕೆಲರಿದೇನಿವಗಿಲ್ಲಿ ತೊಲಗಿಸಿ
ಕಳೆವುದೀತನನೆಂದು ತಮ್ಮೊಳು
ಕಳವಳಿಸುತೊಮ್ಮೊತ್ತವಾದುದು ಸಕಲ ಮುನಿನಿಕರ ೧೪

ಕೆದರಿದವು ಜಡೆಯಕ್ಷಮಾಲೆಗ
ಳುದುರಿದವು ಕರದಲಿ ಕಮಂಡಲ
ವದುರಿದವು ಹಳುವಾಯ್ತು ಹರಿಣಾಜಿನ ಮುನೀಶ್ವರರ
ಕದಡಿತಂಗ ವಿಭೂತಿ ಕಡುಗೋ
ಪದಲಿ ಹರಿದರು ಹರಗಿರಿಯ ಹ
ತ್ತಿದರು ಕಂಡರು ರಾಜಮೌಳಿಯ ರಾಜಮಂದಿರವ ೧೫

ಶಿವನ ಭವನವ ದೂರದಲಿ ಕಂ
ಡಿವರು ಮೈಯಿಕ್ಕಿದರು ವರಮುನಿ
ನಿವಹ ಬಂದುದು ಬಾಗಿಲವದಿರು ಬಿನ್ನಹದ ಹದನ
ವಿವರಿಸಲು ಕರೆಸಿದನು ಕರುಣಾ
ರ್ಣವನ ಕಂಡರು ಮೈಯ ಚಾಚಿದ
ರವನಿಯಲಿ ಜಯಜಯ ಮಹೇಶ ನಮಃಶಿವಾಯೆನುತ ೧೬

ಏಳಿರೈ ಸಾಕೇಳಿರೈ ಸಾ
ಕೇಳಿ ಕುಳ್ಳಿರಿ ಬಂದ ಕಾರ್ಯವ
ಹೇಳಿಯೆನೆ ಮುನಿನಿಕರವೆದ್ದುದು ನೊಸಲ ಕೈಗಳಲಿ
ಹೇಳಿ ನೀವ್ ಹೇಳಿನ್ನು ಹಿರಿಯರು
ಹೇಳಿಯೆನುತೊಳಗೊಳಗೆ ಘೋಳಾ
ಘೋಳಿ ಮುಸಗಿದುದೊಬ್ಬ ಮುನಿ ನಿಲಿಸಿದನು ಕಳವಳವ ೧೭

ನೀಲಲೋಹಿತ ಚಿತ್ತವಿಸು ಶಶಿ
ಮೌಳಿ ಬಿನ್ನಹ ನಿಗಮ ಮಹಿಳಾ
ಮೌಳಿಮಣಿ ನೀರಾಜಿತಾಂಘ್ರಿ ಸರೋಜನವಧಾನ
ಪಾಲಿಸುವುದಾರ್ತರನು ಪರಮ ಕೃ
ಪಾಳು ನೀನತಿ ದೀನರಾವು ವಿ
ಟಾಳ ಸಂಗತಿಯಾದುದೆಮ್ಮಯ ಜಪತಪಸ್ಥಿತಿಗೆ ೧೮

ಶಾಂತಿಯೇ ಮನೆ ನಿಮ್ಮ ಚರಣದ
ಚಿಂತೆಯೇ ಮನೆವಾರ್ತೆ ವರ ವೇ
ದಾಂತ ತತ್ವರಹಸ್ಯ ಮನನಾದಿಗಳು ಸರ್ವಸ್ವ
ದಾಂತಿಯೇ ಸುಖಭೋಗ ಮಾಯಾ
ಶ್ರಾಂತಿಯೇ ಮಾಹಾತ್ಮ್ಯಯಿವು ಋಷಿ
ಸಂತತಿಗೆ ವರ್ತನವಲೇ ವೈದಿಕ ವಿಧಾನದಲಿ ೧೯

ಹೋದ ಹೊಲಬಿಲ್ಲದರೊಳಗೆ ದು
ರ್ಭೇದ ತಪವೇ ಹೊಗೆವುತದೆ ಹೊ
ಳ್ಳಾದವೆಮ್ಮ ಸಮಾಧಿ ಸೈರಣೆ ಶಮದಮಾದಿಗಳು
ಕಾದುದಾ ವನಭೂಮಿ ತರು ಗು
ಲ್ಮಾದಿಗಳು ಕಟ್ಟೊಣಗಲಾದವು
ತೀದುವೆಮ್ಮಯ ನಿತ್ಯವಿಧಿಯೊಬ್ಬನ ದೆಸೆಯಲಿಂದು ೨೦

ರಾಯನೋ ಮೇಣವನು ರಾವುತ
ಪಾಯಕನೊ ಋಷಿಯಲ್ಲ ಋಷಿಗೇ
ಕಾಯುಧಂಗಳ ಗೊಡವೆ ನಮಗೇಕದರ ಬೂತಾಟ
ಸಾಯಕದ ಬತ್ತಳಿಗೆ ಚಾಪವ
ಡಾಯುಧದ ಕುಶೆವೆರಳ ಜಡೆಗಳ
ನಾಯತದಲನುಚಿತದ ಸಂಗದ ತಪಸಿಯುಹನೆಂದ ೨೧

ಆಡಿದೊಡೆ ನಾವ್ ಮುನಿಗಸೂಯುವ
ಮಾಡಿದವರುಗಳಿಂದ ನಿಮ್ಮಡಿ
ಗಾಡದಿದ್ದರೆ ಬಿಸಿಲ ರಾಶಿಯನುರಿಯ ಸೂತಕವ
ಕೂಡಿತೆಮ್ಮಯ ನಿತ್ಯವಿಧಿ ತಪ
ಗೇಡಿಯನು ಬಿಡದೆಬ್ಬಿಸೆಮಗೆಡೆ
ಮಾಡಿಕೊಡಬೇಕೆಂದು ಮತ್ತೆರಗಿದರು ಶಿವಪದಕೆ ೨೨

ಮತ್ತೆ ನಮ್ಮನು ಪಿಸುಣರೆಂದೇ
ಚಿತ್ತವಿಸಲಾಗದು ತಪೋವನ
ಹೊತ್ತುತಿದೆ ವಿಪರೀತ ತಪಸಿಯ ತೀವ್ರತೇಜದಲಿ
ಇತ್ತಲೊಂದು ತಪೋವನವನೆಮ
ಗಿತ್ತು ಕರುಣಿಸು ಮೇಣ್ ವಿಕಾರಿಯ
ನೆತ್ತಿ ಕಳೆ ಕಾರುಣ್ಯ ನಿಧಿಯೆಂದುದು ಮುನಿಸ್ತೋಮ ೨೩

ಕೇಳುತವನಾರೋಯೆನುತ ಶಶಿ
ಮೌಳಿ ವಿಮಲಜ್ಞಾನ ದೃಷ್ಟಿಯೊ
ಳಾಳನರಿದನು ಮನದೊಳಗೆ ನಮ್ಮವನಲಾಯೆನುತ
ಬಾಲಹಿಮಕರಣನೊಡನೆ ಸ
ಮೇಳವಹ ನಗೆ ಮಿನಗೆ ಮುನಿಜನ
ಜಾಲವನು ನೋಡಿದನು ಕರೆದನು ಕೃಪೆಯ ತನಿಮಳೆಯ ೨೪

ಅರಿದೆ ನಾನಂಜದಿರಿ ಹುಯ್ಯಲ
ಬರಿದೆ ತಂದಿರಿ ನಿಮ್ಮ ಗೆಲವಿಂ
ಗೆರಗುವವನವನಲ್ಲ ಮೀರಿಹುದಾತನಂಗವಣೆ
ಅರುಹಲೇಕೆ ಭವತ್ತಪೋವನ
ನೆರೆ ನಿಮಗೆ ನಾನವನನೆಬ್ಬಿಸಿ
ತೆರಹ ಮಾಡಿಸಿಕೊಡುವೆನೆಂದನು ನಗುತ ಶಶಿಮೌಳಿ ೨೫

ಏಳಿ ನೀವಾಶ್ರಮಕೆ ಪೋಗಿ ಚ
ಡಾಳಿಸದು ಮುನಿವರನ ತಪವಿ
ನ್ನೇಳಿ ದಿಟ ಭಯವಿಲ್ಲವೆಂದು ಕರಾಂಬುಜವ ನೆಗಹಿ
ಬೀಳುಗೊಟ್ಟನು ಸಕಲ ಮುನಿಜನ
ಜಾಲವನು ಕರೆ ಭೂತ ನಿಕರವ
ಮೇಳವಿಸಹೇಳೆಂದು ನಂದೀಶ್ವರಗೆ ನೇಮಿಸಿದ ೨೬

ಅರಸ ಕೇಳೈ ಬೇಂಟೆಯೆಂದೀ
ಶ್ವರನ ಕಟಕದೊಳೊದರಿದುದು ಡಂ
ಗುರದ ದನಿ ಡಾವರದೊಳೈದಿತು ನಿಖಿಳ ಭುವನವನು
ಪರಮ ಕರುಣಾಸಿಂಧು ಭಕ್ತನ
ಹೊರೆವ ಭರದಲಿ ಭೂರಿ ಮೃಗಯಾ
ಚರಣೆಗೋಸುಗ ಶಬರ ವರರೂಪದಲಿ ರಂಜಿಸಿದ ೨೭

ತೆಗೆದು ತಲೆಮಾಲೆಯನು ಹಸುರಂ
ಗಿಗಳ ತೊಟ್ಟನು ಸುತ್ತಬರೆ ಹೀ
ಲಿಗಳ ಹರಹಿನ ಪಾರಿವದ ಚಲ್ಲಣವನಳವಡಿಸಿ
ಬಿಗಿಜಡೆಯ ಶಶಿಮುಖಕೆ ಪತ್ರಾ
ಳಿಗಳ ಕಟ್ಟಿ ಕಿರಾತವೇಷದ
ವಿಗಡ ದೇವರ ದೇವ ಕೊಂಡನು ಚಾಪ ಮಾರ್ಗಣವ ೨೮

ದೇವನನುರೂಪದಲಿ ನಿಂದರು
ದೇವಿಯರು ಗುಹ ಗಣಪತಿಗಳೆ
ಲ್ಲಾ ವಿನೋದವ ನೋಡಿ ಧರಿಸಿದರೊಲಿದು ಶಾಬರವ
ಆ ವಿಗಡ ನಂದೀಶ ವೀರಕ
ದೇವಲಕ ರೇಣುಕ ಮಹೋದರ
ದಾವಶಿಖಿಮುಖ ವೀರಭದ್ರಾದ್ಯಖಿಲ ಭೂತಗಣ ೨೯

ಅರಸ ಕೇಳೈ ಸಪ್ತ ಮಾತೃಕೆ
ಯರು ಮಹೋಪನಿಷನ್ನಿತಂಬಿನಿ
ಯರು ದಿಶಾದೇವಿಯರು ಶ್ರುತಿವಿದ್ಯಾದಿಶಕ್ತಿಯರು
ಉರಗಿಯರು ವಿದ್ಯಾಧರಿಯರ
ಪ್ಸರಿಯರರೌಷಧದ ಮಂತ್ರ ದೇವತೆ
ಯರು ಪುಳಿಂದಿಯರಾಯ್ತು ಪರಮೇಶ್ವರಿಯ ಬಳಸಿನಲಿ ೩೦

ಧೃತಿ ಮಹೋನ್ನತಿ, ತುಷ್ಟಿಪುಷ್ಟಿ
ಸ್ಮೃತಿ, ಸರಸ್ವತಿ, ಸಂವಿಧಾಯಕಿ
ಮತಿ ಮನಸ್ವಿನಿ ಸಿದ್ಧಿ ಕೀರ್ತಿಖ್ಯಾತಿ ನಿಯುತಮತಿ
ಗತಿ ಕಳಾಮಾನಿನಿ ಕಳಾವತಿ
ರತಿ ರಸಾವತಿ ಚಂಡಿ ಜಯೆ ಮಧು
ಮತಿಯೆನಿಪ ದೇವಿಯರು ಶಬರಿಯರಾಯ್ತು ನಿಮಿಷದಲಿ ೩೧

ಮಾರಿ ಚಾಮುಂಡಿ ಸ್ಮಶಾನಾ
ಕಾರವತಿ ವರ ಕಾಳರಾತ್ರಿ ಮ
ಹೀರಮಣಿ ಜಯಲಕ್ಷ್ಮಿ ಯೋಗಿನಿ, ಯಜ್ಞ ದೇವಿಯರು
ವೀರಸಿರಿ ವನಲಕ್ಷ್ಮಿ ಶಾಕಿನಿ
ನಾರಿ ದೇವತೆ ಡಾಕಿನೀಮುಖಿ
ಭೂರಿ ಶಕ್ತಿಯರೈದೆ ಶಬರಿಯರಾಯ್ತು ನಿಮಿಷದಲಿ ೩೨

ಚಾಳಿಸಿದ ಹದವಿಲ್ಲುಗಳ ಬಿಡಿ
ಕೋಲುಗಳ ಸಂಕಲೆಯ ನಾಯ್ಗಳ
ಕೋಲುವಲೆಗಳ ಸಿಡಿವಲೆಯ ಮಿಡಿವಲೆಯ
ಕಾಲುಗಣ್ಣಿಯ ಹೆಬ್ಬಲೆಯ ಬೆ
ಳ್ಳಾಲಮಲೆಗಳ ಮಯಣದಂಟಿನ
ಮೇಲುಕೊಂಬಿನ ಬೇಟೆಗಾರರು ಬಳಸಿದರು ಶಿವನ ೩೩

ಶ್ರುತಿಗಳೊಳಗ ತರ್ಕಶಾಸ್ತ್ರದ
ಗತಿಯ ಸೋಹಿನ ಮಂತ್ರಮಯ ಸಂ
ತತಿಯ ಸೊಂಪಿನ ವಿವಿಧ ಜಪ ಯಜ್ಞಾದಿಗಳ ಬಲೆಯ
ವ್ರತದ ಜಂತ್ರದ ಕಣ್ಣಿಗಳ ಸ
ತ್ಕೃತಿಯ ಕೋಲ್ಗುಂಡುಗಳ ಯೋಗ
ಸ್ಥಿತಿಯ ಸರಳಿನ ಶಬರರೈದಿತು ಶಿವನ ಬಳಸಿನಲಿ ೩೪

ಶ್ರವಣ ಮನನದ ಬೀಸುವಲೆ ಶಾಂ
ಭವ ಸುವೇದಾ ದೀಕ್ಷೆಗಳ ಬಲು
ಗವಣೆಗಳ ಪಶುಪಾಶ ಬಂಧದ ಬೋಳೆಯಂಬುಗಳ
ನವ ವಿಧಾಮಲ ಭಕ್ತಿಗಳ ರಣ
ತವಕದೀಹದ ಹುಲ್ಲೆಗಳ ಮೃಗ
ಭವ ವಿದಾರಣ ಸುಭಟರೈದಿತು ಶಿವನನೇಮದಲಿ ೩೫

ಸೋಹಿದೊಡೆ ದೆಸೆದೆಸೆಗೆ ಹಾಯ್ದುದು
ಮೋಹತಮ ಡಂಭಾದಿ ಮೃಗತತಿ
ತೋಹಿನಲಿ ಬಿದ್ದುದು ಮಹಾಪಾತಕ ಮದೇಭಚಯ
ದ್ರೋಹ ದೀಹಾಮೃಗವಸೂಯ ವ
ರಾಹ ಸಂಕೀರ್ಣೋಪಪಾತಕ
ದೇಹವಳಿದವನಂತವದರೊಳು ಶಿವನ ಬೇಟೆಯಲಿ ೩೬

ಜಯ ಜಯೆಂದುದು ನಿಖಿಳ ಜಗ ಶ್ರುತಿ
ಚಯ ಛಡಾಳಿಸಿ ಹೊಗಳುತಿರ್ದುದು
ನಯನ ಗೋಚರವಾಯ್ತು ಸಾಕ್ಷಾತ್ಪರಮ ಶಿವತತ್ವ
ಲಯದ ಜನನದ ಸುಳಿಯ ಸಂಸೃತಿ
ಮಯ ಸಮುದ್ರವ ಸುರಿದು ಸಲೆ ನಿ
ರ್ಭಯವು ಭಕುತರಿಗೆಂಬವೊಲು ಮಸಗಿತು ಮಹಾಸಬುದ ೩೭

ಹೇಳುವೊಡೆ ರೋಮಾಂಚನವಲೇ
ಕೇಳು ನೃಪ ಕೈಲಾಸವಾಸಿಯ
ಲೀಲೆಯಿಂನು ನಿಜಭಕ್ತನ ಸಂದರ್ಶನಾರ್ಥವಲೆ
ಆಳು ನಡೆತಂದಿಂದ್ರ ಕೀಲದ
ಶೈಲವನು ಬೆರೆಸಿತು ಮಹಾದ್ಭುತ
ದೇಳಿಗೆಯನೇನೆಂಬೆನೈ ಕೈರಾತ ವಿಭ್ರಮವ ೩೮

ಇಂಬಿನಲ್ಲಿಹ ಮೂಕ ದಾನವ
ನೆಂಬನೊಬ್ಬನು ತನ್ಮಹಾದ್ರಿ ನಿ
ತಂಬ ವನದ ನಿಕುಂಜದಲಿ ನಿರ್ಭಯ ವಿಹಾರದಲಿ
ಚುಂಬಿಸಿತು ಬಲು ರಭಸವೆನೆ ವಿಲ
ಯಾಂಬುಧಿಯ ಕಳಕಳವನಮರರ
ತಿಂಬೆನೀಕ್ಷಣವೆನುತ ಖಳನಾಲಿಸಿದನಾ ಧ್ವನಿಯ ೩೯

ಹಂದಿಯಾದನು ದನುಜನಾ ಗಿರಿ
ಕಂದರವ ಹೊರವಂಟು ಬೇಂಟೆಯ
ಮಂದಿಯೊಳಗಡಹಾಯ್ದನೆತ್ತಿದನಡ್ಡ ಬಿದ್ದವರ
ಹಂದಿಯೋ ತಡೆ ನಾಯಗಳ ಬಿಡಿ
ಹಿಂದೆ ಹಿಡಿ ಕೆಡೆ ಕುತ್ತು ಕೈಗೊ
ಳ್ಳೆಂದು ಗಜಬಜಿಸಿತ್ತು ಗಾವಳಿ ಗಹನ ಮಧ್ಯದಲಿ ೪೦

ಎಳೆವೆರೆಯ ನಡುವಿದ್ದ ರಾಹುವೊ
ಲಳವಡುವ ದಾಡೆಗಳ ದೊಗುಮಿಗೆ
ಬೆಳೆದ ನೀಲಾಚಲಕೆ ಸರಿಯೆಂದೆನಿಪ ಹೇರೊಡಲ
ಮುಳಿದು ಗರ್ಜಿಸಿ ಕಿಡಿ ಸುರಿವ ಕಂ
ಗಳಲಿ ರೌದ್ರಾಟೋಪದಲಿ ಕೆ
ಕ್ಕಳಿಸಿದಿಕ್ಕೆಲ ನೋಡುತಿರ್ದುದು ದೇವಸಂತತಿಯ ೪೧

ಕೂಡೆ ಕಟ್ಟಿತು ಭೂತಗಣ ಧ್ವನಿ
ಮಾಡಿ ಜಡಿದಬ್ಬರಿಸಿ ಮೋರೆಯ
ನೀಡಿ ನಾಯ್ಗಳು ತುಡುಕಿದವು ತಿರುಗಿದೊಲೆ ಹಿಮ್ಮಡಿಯ
ಝಾಡಿಸುತ ಕವಿದೆತ್ತಲೊಂದೇ
ದಾಡೆ ಬರತುದು ನೂರು ಗಾಯವ
ನೋಡುತಿರ್ದುದು ಸೇನೆ ಕಂಡನು ಶೂಲಿ ಸೂಕರನ ೪೨

ಇಡುವ ಸೆಲ್ಲೆಹ ಬಲ್ಲೆಹದ ಹೆ
ಗ್ಗಿಡಿಯನುಗುಳುವ ಬಾಯ ಧಾರೆಯ
ಸುಡಿದು ಹರಹಿ ಮಹೋಗ್ರತರ ಜಾಯಿಲನ ಜಂಗುಳಿಯ
ಕಡಿದು ಕೆಡಹಿ ಪುಳಿಂದ ಶಬರಿಯ
ರೆಡೆಗೆಡೆಯಲೊಡಹಾಯ್ದು ಮಿಗೆ ಘುಡಿ
ಘುಡಿಸಿ ಕವಿದೈತರಲು ಧೃತಿಗೆಟ್ಟುದು ಗಣಸ್ತೋಮ ೪೩

ಇದುವೆ ಸಮಯವಲಾಯೆನುತ ಹೂ
ಡಿದನು ಬಾಣವನುಗಿದು ಪೂರಾ
ಯದಲಿ ತೂಗಿ ಪಿನಾಕಿಯೆಚ್ಚನು ಮೂಕದಾನವನ
ಒದೆದು ಹಾಯ್ದುದು ಬಾಣ ಗರಿದೋ
ರಿದುದು ಬದಿಯಲಿ ಕೊಡಹಿ ಗೋಳಿಡು
ತದು ಧನಂಜಯನತ್ತ ಹೋದುದು ಹೊತ್ತಕಣೆ ಸಹಿತ ೪೪

ಬಂದು ಗಿರಿ ಕಂದರದೊಳಿಹ ಮುನಿ
ವೃಂದದೊಳಗಡಹಾಯ್ದು ಕೆಡಹುತ
ಹಂದಿ ಮೋರೆಯ ನೆಗಹಿ ಗಜರಿ ಗರ್ಜಿಸಿತು
ಮುಂದಿ ಬೆದರುತ ಗೋಳಿಡುತಲಾ
ಇಂದುಧರನೇ ಬಲ್ಲ ಶಿವ ಶಿವ
ಯೆಂದು ಮೊರೆಯಿಡೆ ಕೇಳಿ ಕಂದೆರೆದೆದ್ದನಾ ಪಾರ್ಥ ೪೫

ಕಂಡನರ್ಜುನನೀ ವರಾಹನ
ದಂಡಿ ಲೇಸಲ್ಲೆನುತ ಬಾಣವ
ಗಾಂಡಿವದೊಳಳವಡಿಸಿ ಬೊಬ್ಬಿರಿದೆಚ್ಚನಾ ಖಳನ
ದಿಂಡುಗೆಡೆದುದು ಕಾಲ ಕೊಡಹುತ
ಗಂಡಶೈಲದವೋಲು ಭೂತವ
ದಿಂಡುವರಿಯುವ ಹಂದಿ ಬಿದ್ದುದು ಪಾರ್ಥನಿದಿರಿನಲಿ ೪೬

ಬಂದನೀಶ್ವರ ನಾವು ಕೆಡಹಿದ
ಹಂದಿ ನಮ್ಮದು ತೆಗೆಯಿಯೆನೆ ನರ
ನೆಂದ ನಮ್ಮಂಬಿನಲಿ ಬಿದ್ದುದು ಸಾರು ನೀನೆನಲು
ಬಂದುದೇ ಕಾಮಿಂಪ ವಿರೋಧದ
ಕುಂದು ಪಾರ್ಥನ ಚಿತ್ತದಲಿ ಬಾ
ಲೇಂದುಧರನೆಂದೆತ್ತಬಲ್ಲನು ಕೆಣಕಿದನು ಶಿವನ ೪೭

ಆರನೆಯ ಸಂಧಿ

ಸೂ. ಕದನ ಮುಖದಲಿ ಖೋಡಿಯಿಲ್ಲದೆ
ಬೆದರದೊದಗಿದ ನರಗೆ ಕಾರು
ಣ್ಯದಲಿ ಕಾಮವಿರೋಧಿ ಕೊಟ್ಟನು ಪಾಶುಪತ ಶರವ

ಎಲೆ ಕಿರಾತ ಮದೀಯ ಬಾಣದ
ಬಲೆಗೆ ನೀ ಮೃಗವಾಗದಿರು ನಿ
ನ್ನಳವ ಮರೆಯಾ ಬನದ ನರಿ ಮೊಲ ಹುಲ್ಲೆ ಹರಿಣನಲಿ
ಗೆಲಿದ ಗರುವನು ನೀನು ನಿನ್ನ
ಗ್ಗಳಿಕೆಗಾವಂಜುವೆವು ನಿನ್ನೀ
ದಳಕೆ ಪತಿಯುಂಟಾದಡಾತನ ಕೊಂಡು ಬಾಯೆಂದ ೧

ಎನಲು ನಕ್ಕನು ಶಂಭು ಭಕ್ತನ
ಮನದ ಧೃತಿಯನು ಭುಜ ಬಲವನಾ
ತನ ಪರಾಕ್ರಮ ಲಕ್ಷ್ಮಿಯನು ಪಾರ್ವತಿಗೆ ತೋರಿಸುತ
ನೆನೆದು ನುಡಿದನಿದೇನು ತಮ್ಮಡಿ
ನಿನಗೆ ತಪದಲಿ ಖಡ್ಗವೇಕೀ
ಧನು ಶರಾವಳಿಯೇಕೆ ನಿನ್ನಂಗವಣೆಯೇನೆಂದ ೨

ಏಕೆ ನಿನಗೀ ತಪದ ಚಿಂತೆ ವಿ
ವೇಕ ಶಾಸ್ತ್ರ ವಿಚಾರವಿದು ವಿಪಿ
ನೌಕಸರ ಸಂಹಾರ ವಿದ್ಯಾವೃತ್ತಿ ನಿನ್ನದಲೆ
ಆಕೆವಾಳರ ಕರೆಸು ನೀನೇ
ಕಾಕಿ ನಿನ್ನಲಿ ಹರಿಯದಾಹವ
ವೇಕೆ ನಿನಗೀಗೆಂದು ಕಪಟ ಕಿರಾತನನು ಜರೆದ ೩

ನೀವು ಬಲ್ಲಿರಿ ಶಾಸ್ತ್ರದಲಿ ಶ
ಸ್ತ್ರಾವಳಿಯಲಾವಿಂದು ಪಕ್ಷಿ ಮೃ
ಗಾವಳಿಯ ಬೇಂಟೆಯಲಿ ಬಲ್ಲೆವು ಜಾತಿ ಧರ್ಮವಿದು
ನೀವು ಬಲುಹುಳ್ಳವರು ನಿಮ್ಮೊಡ
ನಾವು ಸೆಣಸುವರಲ್ಲ ನಿಮ್ಮವೊ
ಲಾವ ಋಷಿ ಶಸ್ತ್ರಜ್ಞನಾತನ ಬಿರುದ ತಡೆಯೆಂದ ೪

ಕಟಕಿಯೇಕೆ ಪುಳಿಂದ ನಾವು
ಬ್ಬಟೆಯ ತಪಸಿಗಳೆಂಬುದಿದು ವಿ
ಸ್ಫುಟವಲೇ ತಪ್ಪೇನು ನಿನ್ನೊಡನೆಂದು ಫಲವೇನು
ಜಟೆ ಮೃಗಾಜಿನ ಭಸ್ಮದೊಡನು
ತ್ಕಟದ ಧನು ಶರ ಖಡ್ಗದಲಿ ಧೂ
ರ್ಜಟಿಯಿಹನು ನಾವವರ ಶಿಷ್ಯರು ಶಬರ ಕೇಳೆಂದ ೫

ಲೋಕಶಿಕ್ಷಕರಲ್ಲಲೇ ನಮ
ಗೇಕೆ ನಿಮ್ಮಯ ತಪದ ಚಿಂತೆ ಪಿ
ನಾಕಧರನಡಹಾಯ್ದುರೆಯು ಬಿಡೆವೆಮ್ಮ ವಾಸಿಗಳ
ಈ ಕಳಂಬವಿದೆಮ್ಮದೆನುತ ವ
ನೌಕಹದ ನೆಳಲಿನಲಿ ನಿಂದು ಪಿ
ನಾಕಿ ನುಡಿದನು ಕಡಿದನೀತನ ಸೈರಣೆಯ ಮನವ ೬

ಮುಸಗಿದನು ನಿಮ್ಮಾತನುಗಿದೆ
ಬ್ಬಿಸಿದ ಹುಲಿಯೋ ನೊಂದ ಹಂದಿಯೊ
ಹಸಿದ ಭುಂಜಗನೊ, ಕಾದ ಕಟ್ಟುಕ್ಕಿನ ಛಡಾಳಿಕೆಯೊ
ಉಸುರುಗಳ ಕಾರ್ಬೊಗೆಗಳಾಲಿಯ
ಬಿಸುಗುದಿಯ ಬಲು ಕೆಂಡವಂಬಿನ
ಹೊಸ ಮಸೆಗಳುರಿ ಝೂಡಿ ಝುಳಪಿಸೆ ಪಾರ್ಥ ಖತಿಗೊಂಡ ೭

ಆದಡಿದ ಕೊಳ್ಳೆನುತ ಕೆನ್ನೆಗೆ
ಸೇದಿಬಿಟ್ಟನು ಸರಳನದು ಹಿಂ
ದಾದುದಾ ಬಳಿ ಸರಳನದ ಹಿಂದಿಕ್ಕಿ ಮತ್ತೊಂದು
ಹೋದುದದ ಹಿಂದಿಕ್ಕಿ ಮತ್ತೊಂ
ದೈದಿತತಿ ವೇಗಾಯ್ಲ್ಲ ತನದನು
ವಾದಸಾಧ್ಯದ ಸರಳು ಕವಿದವು ಬಿಟ್ಟ ಸೂಟಿಯಲಿ ೮

ಏನ ಹೇಳುವೆನರಸ ಶರದಭಿ
ಮಾನ ದೇವತೆಯುಂಟಲಾ ಹರಿ
ಸೂನುವರಿಯದಡಂಬೆಯುರಿಯುಳೆ ಚಂಡಿಕಾದೇವಿ
ಭಾನುಮಂಡಳದಂಧಕಾರದ
ವೈನತೇಯನ ಭುಜಗ ತತಿಯ ಸ
ಮಾನಧರ್ಮವ ಕಂಡೆನೀಶನೊಳರ್ಜುನಾಸ್ತ್ರದಲಿ ೯

ಮುತ್ತೆ ಸುರಿದನು ಸರಳ ಮಳೆಯುನ
ದೆತ್ತ ನಭ ದೆಸೆಯತ್ತ ಧಾರುಣಿ
ಯೆತ್ತಲರ್ಜುನನೆತ್ತ ಕಪಟ ಕಿರಾತ ತಾನೆತ್ತ
ಹೊತ್ತ ಹೊಗರಿನ ಮೊರೆವ ಗರಿಗಳ
ಮುಂತ್ತುಗಿಡಗಳ ಹೊಳೆವ ಧಾರೆಯ
ಮೊತ್ತದಂಬೌಕಿದವು ಮೃತ್ಯುಂಜಯುನ ಸಮ್ಮುಖಕೆ ೧೦

ಮಂಜು ಮುಸುಕಿದೊಡೇನು ಪರ್ವತ
ವಂಜುವುದೆ ಹಾಲಹಲವ ನೊಣ
ನೆಂಜಲಿಸುವುದೆ ವಡಬ ಶಿಖಿ ನನೆವುದೆ ತುಷಾರದಲಿ
ಕಂಜ ನಾಳದಿ ಕಟ್ಟುವಡೆವುದೆ
ಕುಂಜರನು ನರಶರದ ಜೊಡಿನ
ಜುಂಜುವೊಳೆಯಲಿ ಜಾಹ್ನವೀಧರ ಜಾರುವನೆಯೆಂದ ೧೧

ಕೆರಳಿದನು ಹೇರಂಬ ಗುಹನ
ಬ್ಬರಿಸಿದನು ರೋಷದಲಿ ಮಸಗಿತು
ತರತರದ ವರವೀರಭದ್ರಾದ್ಯಖಿಳ ಭೂತಗಣ
ಹರನು ಕಂಡನಿದೇನಿದೇನ
ಚ್ಚರಿ ಧನಂಜಯನೆಮಗೆ ನೂರ್ಮಡಿ
ಕರಹಿತವ ನಿಮ್ಮಿಂದ ನೀವ್ ಗಜಬಜಿಸ ಬೇಡೆಂದ ೧೨

ಎನುತ ಕೊಂಡನು ಧನುವನಾ ಪಾ
ರ್ಥನ ಶರೌಘವನೆಚ್ಚಡೀಶನ
ಮೊನೆಗಣೆಯುಲಕ್ಕಾಡಿದವು ಬಾಡಿದವು ಬಳಿಸರಳು
ಕನಲಿ ಕಿವಿವರೆಗುಗಿದು ಘಡ ಹೋ
ಗೆನುತ ಮಗುಳೆಚ್ಚನು ಧನಂಜಯ
ನನಿತು ಶರವನು ಕಡಿದು ಮದನ ವಿರೋಧಿ ಮಗುಳೆಚ್ಚ ೧೩

ಎಸುಗೆಯೊಳ್ಳಿತು ಶಬರನತಿ ಸಾ
ಹಸಿಕನೈ ಬಿಲ್ಲಾಳಲಾ ಸರಿ
ಬೆಸನನೆಚ್ಚನು ನಮ್ಮೊಡನೆ ಮರುಳು ಪೂತು ಹಾಯ್ಕೆನುತ
ಹೊಸ ಮಸೆಯ ಹೊಗರಲಗುಗಳ ದ
ಳ್ಳಿಸುವ ಧಾರೆಯ ಕೆಂಗರಿಯ ಡಾ
ಳಿಸುವ ಕಣೆಗಳ ಶರನಿಧಿಯ ಕವಿಸಿದನು ಕಲಿಪಾರ್ಥ ೧೪

ಈಡಿರಿದವೊಂದೊಂದರಲೆ ಹೊಗೆ
ಝಾಡಿ ಝುಳಪಿಸೆ ಉರಿಗಳಲಿ ಸರ
ಳೋಡಿದವು ಗಾಂಡಿವವನೊದೆದು ಮಹೇಶನಿದಿರಿನಲಿ
ಕಾಡಿದೊಡೆ ಕಾರುಣ್ಯನಿಧಿ ಕೊಂ
ಡಾಡುತಿರ್ದನು ಪಾರ್ಥನಂಬಿನ
ಮೂಡಿಗೆಯು ಸಂವರಣೆ ಸವೆದುದು ಸವೆಯದಾಟೋಪ ೧೫

ಎಲೆ ಕಿರಾತ ಕಿರಾತರೊಳಗ
ಗ್ಗಳೆಯನಹೆಯೋ ದೇವ ದಾನವ
ರೊಳಗೆ ಸೈರಿಸಿ ನಿಲುವನಾವನು ನಮ್ಮ ವಿಲಗದಲಿ
ಅಳುಕದಿರು ಕಲಿಯಾಗೆನುತ ತುದಿ
ಹಿಳುಕ ಮಂತ್ರಿಸಿ ದಿವ್ಯ ಬಾಣಾ
ವಳಿಗಳಲಿ ಬಾಲೇಂದುಮೌಳಿಯನೆಚ್ಚನಾ ಪಾರ್ಥ ೧೬

ಏಸು ಮಂತ್ರಾಸ್ತ್ರದಲಿ ಮುಸುಕಿದ
ರೈಸುವನು ಹರ ನುಂಗಿದನು ಮಗು
ಳೇಸು ಕೂರಂಬುಗಳನೆಚ್ಚರೆ ಕಡಿದನಂಬಿನಲಿ
ಈಸು ವೆಗ್ಗಳರಾರೆನಿಪಭ
ಜ್ಞಾಸೆ ಬೇಡಾ ಕ್ಷಾತ್ರ ತಾಮಸ
ವೇಸು ಬಲುಹೋ ನಿಮ್ಮ ಜಾತಿಗೆ ರಾಯ ಕೇಳೆಂದ ೧೭

ಅಂದು ಕಾಂಡವ ವನದ ದಹನದೆ
ಬಂದುದಕ್ಷಯ ಬಾಣವಿದು ತಾ
ನಿಂದು ಬರತುದು ಬಹಳ ಜಲನಿಧಿ ಬತ್ತುವಂದದಲಿ
ಇಂದುಮೌಳಿಯ ಸೇವೆಗಿಂದು ಪು
ಳಿಂದ ಕಂಟಕನಾದನೇ ಹಾ
ಯೆಂದು ಗರ್ಜಿಸಿ ಚಾಪದಿಂದಪ್ಪಳಿಸಿದನು ಶಿವನ ೧೮

ಕಳಚಿದನು ದಂಡೆಯಲಿ ಗಾಯದ
ಲಳುಕಿದನಲಾಯೆನುತ ಮಗುಳ
ಪ್ಪಳಿಸಿದನು ಮೇಲ್ವಾಯ್ದು ಹೊಯ್ಪನು ಜರೆದು ಝೋಂಪಿಸುತ
ಮೆಲುನಗೆಯಲರ್ಜುನನ ಚಾಪವ
ಸೆಳೆದುಕೊಂಡನು ತನ್ನ ಭಕ್ತನ
ಬೆಳವಿಗೆಯ ಮಾಡಿದನುಘೇಯೆಂದುದು ಸುರಸ್ತೋಮ ೧೯

ತಿಳಿವನುಗಿದಡಿಗಿಕ್ಕಿ ಮರವೆಯು
ಕಳಕಳವೆ ಮೇಲಾಯ್ತು ತಾಮಸ
ಜಲನಿಧಿಯ ತಾಯ್ಮಳಲ ಮುಟ್ಟಿತು ಮನ ಧನಂಜಯನ
ಸೆಳೆದನೊರೆಯಲಡಾಯುಧವ ಬೀ
ಳಲವೊ ಶಬರಯೆನುತ್ತ ಹೊಯ್ದನು
ತಳಿರೆಲೆಯ ತಳೆದೆಳೆವೆರೆಯ ನೆಲವನೆಯ ಪಶುಪತಿಯ ೨೦

ಆಯುಧದ ಬರಿ ಮುಷ್ಟಿಯುಳಿಯಲ
ಡಾಯುಧವ ಶಿವ ಕೊಂಡನೀತನ
ಬಾಯ ಹವಣಿನ ತುತ್ತಹುದೆ ತ್ರಿಪುರಾರಿಯೊಡ್ಡವಣೆ
ರಾಯ ಕೇಳ್ಳೆ ಪಾರ್ಥನುಬ್ಬಟೆ
ಬೀಯದೀಸರ ಮೇಲೆ ವಿ
ಡಾಯಿಯಾಯ್ತತಿ ಚಪಲತನದ ವಿವೇಕ ಮಡಮುರಿಯೆ ೨೧

ಮರನ ಹೆಗ್ಗೊಂಬುಗಳಲಿಟ್ಟನು
ತಿರುಹಿ ಕಲ್ಗುಂಡುಗಳ ಮಳೆಯಲಿ
ಹರನ ನಾದಿದನೇನನೆಂಬೆನು ಪಾರ್ಥನುರವಣೆಯ
ಸರಳ ಸಾರದಲಿನಿತುಮವನು ಕ
ತ್ತರಿಸಿ ಕರುಣಾವನಧಿ ನುಡಿದನು
ಮರುಳೆ ತಮ್ಮಡಿ ಕೈದುವುಳ್ಳೊಡೆ ಕೊಂಡು ಬಾಯೆಂದ ೨೨

ಕೈದುವೇಕೆ ಪುಳಿಂದ ನಮ್ಮೊಡ
ನೈದಿಸಾ ಭುಜ ಯುದ್ಧದಲಿ ಬಲು
ಗೈದುವಿದೆಲಾ ಮುಷ್ಟಿ ನಿನಗದುಪಾಯ ಚೊಕ್ಕೆಯುವ
ಕಾಯ್ದುಕೊಳ್ಳನುವಾಗು ನಿನ್ನವ
ರೈದಿ ನೋಡಲಿಯೆನುತ ಭುಜವನು
ಹೊಯ್ದು ನಿಂದನು ಪಾರ್ಥನುರೆ ಬೆರಗಾಗೆ ಭೂತಗಣ ೨೩

ಕಂಡಿರೇ ದೇವಿಯರು ನರನು
ದ್ದಂಡತನವನು ತರಗೆಲೆಯ ಕೈ
ಗೊಂಡು ತಿಂಗಳು ನಾಲ್ಕ ಪವನಗ್ರಾಸದಿಂ ಬಳಿಕ
ದಂಡಿಸಿದನೀ ದೇಹವನು ನಾ
ವಂಡಲೆಯಲೊದಗಿದನಲೇ ಸಮು
ದಂಡಿಯಲಿ ನಮ್ಮೊಡನೆಯೆಂದನು ನಗುತ ಶಶಿಮೌಳಿ ೨೪

ಹಾರಿತಾಯುಧವೆಂದು ಭೀತಿಗೆ
ಮಾರುವೋದನೆ ವೀರರಸ ನೊರೆ
ಯಾರಿತೇ ನಿಜಬಾಹು ಶಕ್ತಿಯೊಳುಂಟೆ ಖಯಖೋಡಿ
ಮಿಾರಿ ಹತ ಕಂತುಕದವೊಲು ಪುಟ
ವೇರುತಿದೆ ವಿಕ್ರಮ ಚಡಾಳಿಸಿ
ಬೀರುತಿದೆ ಭುಜ ಭಾರಿಯಂಕವ ದೇವಿ ನೋಡೆಂದ ೨೫

ಈತ ನರನೆಂಬವ ಕಣಾ ಸಂ
ಗಾತಿ ನಾರಾಯಣ ಋಷಿಗೆ ತಾ
ವೀತಗಳು ಹರಿವಂಶಭೂತರು ಭಕ್ತರಿವರೆಮಗೆ
ಈತನೆಮ್ಮಯ ಪಾಶುಪತ ವಿ
ಖ್ಯಾತ ಬಾಣವ ಬೇಡಿ ತಪದಲಿ
ವೀತರಾಗ ದ್ವೇಷಿಯಾದನು ಕಾಂತೆ ಕೇಳೆಂದ ೨೬

ಕೊಡುವೆನೀತಂಗೆಮ್ಮ ಶರವನು
ಮಡದಿ ಮತ್ತೆಯು ನೋಡು ಪಾರ್ಥನ
ಕಡುಹನೆನುತಿದಿರಾಂತು ಬಾಹಪ್ಪಳಿಸಿ ಬೊಬ್ಬಿಡುತ
ಹಿಡಿದರಿಬ್ಬರು ಕೈಗಳನು ಹೊ
ಕ್ಕೊಡನೆ ಹತ್ತಾಹತ್ತಿಯಲಿ ಮಿಗೆ
ಜಡಿತೆಯಲಿ ಚಾಳೈಸಿದರು ಬಹುವಿಧದ ಬಿನ್ನಣವ ೨೭

ಬಿಗಿವ ಬಿಡಿಸುವ ಬಿಡಿಸಿದಾಕ್ಷಣ
ತೆಗೆವ ಕಳಚುವ ಕೊಂಬ ಲಳಿಯಲಿ
ಹೊಗುವ ಹತ್ತುವ ಲವಣಿಯಲಿ ಲಾಗಿಸುವ ಹೊರವಡುವ
ಚಿಗಿವ ತೊಡಚುವ ಬಿಗಿವ ಬಿಡಿಸುವ
ಬಗಿವ ಬಳಸುವ ಬಂದ ಗತಿಯಲಿ
ಲಗಡಿಸುವ ಲೋಕೈಕ ವೀರರು ಹೊಕ್ಕು ಹೆಣಗಿದರು ೨೮

ಕರವಳಯ ತಳಹತ್ತ ಡೊಕ್ಕರ
ಶಿರವ ಧಣುಧಣು ವಟ್ಟತಳ ಖೊ
ಪ್ಪರ ದುವಂಗುಲ ಕಂದ ಡೊಕ್ಕರ ತೋರಹತ್ತದಲಿ
ಸರಿಸವಂಕಡ ಬಂಧಪಟ್ಟಸ
ಉರಗ ಬಂಧನ ಬಾಹು ದಣುವಂ
ತರಲಗಡಿಯೆಂಬಿನಿತರಲಿ ತೋರಿದರು ಕೌಶಲವ ೨೯

ಮುರಿವ ಬಿಡಿಸುವ ಥಗೆಯ ಸೈರಿಸಿ
ತೆರಳಿಚುವ ತಳ ಮೇಲುಗಳಲು
ತ್ತರಿಸುವೇಳುವ ಬೀಳ್ವ ಹತ್ತುವ ಸುಳಿವ ವಂಚಿಸುವ
ಹೊರಳ್ವ ತನು ಹೋರಟೆಯ ಸತ್ವೋ
ತ್ಕರುಷ ಸರಿಯೆನೆ ಶಂಭು ಶಿಷ್ಯಗೆ
ಪರಿವಿಡಿಯ ತೋರಿಸುವೊಲಿದ್ದನು ಭೂಪ ಕೇಳೆಂದ ೩೦

ಗಾಯವುಂಟೇ ತೋರು ನಿನಗಡು
ಪಾಯೊ ಬಿಡು ಜೊಕ್ಕೆಯವನೆನುತಲ
ಜೇಯನೊಡನಿದಿರೆದ್ದು ತಿವಿದನು ಹರನ ಪೇರುವ
ಗಾಯ ಘಾತಿಗೆ ನಿಮ್ಮ ಮತವೆಮ
ಗಾಯಿತೆನುತ ಪುರಾರಿ ಕಡು ಪೂ
ರಾಯದಲಿ ಕರವೆತ್ತಿ ನಸು ತಿವಿದನು ಧನಂಜಯನ ೩೧

ತರಹರಿಸಿ ನರನಿಕ್ಕಿದನು ಶಂ
ಕರನ ವಕ್ಷಸ್ಥಳವನೆಡೆಯಲಿ
ಮುರಿದು ಕಳಚಿ ಗಿರೀಶನೆರಗಿದನಿಂದ್ರನಂದನನ
ಮರಳಿ ತಿವಿದನು ಪಾರ್ಥನಾತನ
ಶಿರಕೆ ಕೊಟ್ಟನು ಶಂಭುವಿಂತಿ
ಬ್ಬರ ವಿಷಮ ಗಾಯದ ಗಡಾವಣೆ ಗಲ್ಲಿಸಿತು ಜಗವ ೩೨

ಸುಯ್ಲು ಹೊಗೆಗಳ ಹೊದರುದಿವಿಗುಳ
ಮಯ್ಲುಳಿಯ ಮುರಿವುಗಳ ದೃಢ ವೇ
ಗಾಯ್ಲರಿಕ್ಕಿದ ಗಾಯಗಾಯಕೆ ಮುಷ್ಟಿ ಕಿಡಿಯೇಳೆ
ಶಯ್ಲಹತಿಗಳ ಭಾರಣೆಯ ಬಲು
ಪೊಯ್ಲಬೆಳೆ ಸಿರಿವಂತರಿವರೆನ
ಲಯ್ಲು ಪೈಲದ ಜರಡುಗಳೆ ನರನಾಥ ಕೇಳೆಂದ ೩೩

ತ್ರಾಣವೆಂತುಟೊ ಶಿವಶಿವಾ ಸ
ತ್ರಾಣನಹೆ ಬಹುದಿವಸ ಭುವನ
ಪ್ರಾಣವೇ ಪೋಷಣವಲಾ ಮಝು ಪೂತು ಜಗಜಟ್ಟಿ
ಕಾಣೆನಿವಗೆ ಸಮಾನರನು ಶಿವ
ನಾಣೆ ಗುಣದಲಸೂಯವೇ ತ
ನ್ನಾಣೆ ನೋಡೌ ಶಬರಿಯೆಂದನು ನಗುತ ಮದನಾರಿ ೩೪

ನಿನಗೆ ನಾ ಬೆರಗಾದೆ ನೀನಿಂ
ದೆನಗೆ ಮೆಚ್ಚಿದೆ ದೇವದಾನವ
ಜನವೆನಗೆ ಪಾಡಲ್ಲ ನೀ ಹಲ್ಲಣಿಸಿದೈ ನಮ್ಮ
ಇನನೋ ಮೇಣ್ ದೇವೇಂದ್ರನೋ ಹರ
ತನುಜನೋ ಹರಿಯೋ ಮಹಾ ದೇ
ವನೊ ಕಿರಾತನೊ ನೀನೆನುತ ಮತ್ತೆರಗಿದನು ಶಿವನ ೩೫

ಗಾಯವನು ಮನ್ನಿಸುತ ಶಿವ ಪೂ
ರಾಯದಲಿ ಮೆಟ್ಟಿದನು ಪಾರ್ಥನ
ಬಾಯೊಳೊಕ್ಕುದು ರುಧಿರ ನಾಸಿಕದೆರಡು ಬಾಹೆಯಲಿ
ನೋಯನೊಂದನು ಮಿಾರಿ ಮುನಿಯುಲ
ಪಾಯವಾದುದಕಟಕಟಾ ತ
ಪ್ಪಾಯಿತೇ ತಪ್ಪಾಯ್ತೆನುತ ಮರುಗಿದನು ಮದನಾರಿ ೩೬

ಬಿರಿದುದೀತನ ಗರ್ವಗಿರಿ ಮದ
ಮುರಿದುದೀತನ ಶಕ್ತಿ ಸಲೆ ಟೆ
ಬ್ಬರಿಸಿತಿಂದ್ರಿಯವರ್ಗ ನೆಗ್ಗಿತು ನೆನಹಿನೊಡ್ಡವಣೆ
ಹರಿದುದಂಗಸ್ವೇದಜಲ ಕಾ
ಹುರತೆ ಕಾಲ್ವೊಳೆಯಾಯ್ತು ಮತಿ ನಿ
ಬ್ಬರದ ಬೆರಗಿನ ಬೇಟದಲಿ ಬೆಂಡಾದನಾ ಪಾರ್ಥ ೩೭

ಆವ ಸುವ್ರತ ಭಂಗವೋ ಮೇ
ಣಾವ ದೈವ ದ್ರೋಹವೋ ತಾ
ನಾವ ಶಿವಭಕ್ತಾಪರಾಧಿಯೊ ಪೂರ್ವಜನ್ಮದಲಿ
ಆವ ಹಿರಿಯರ ಹಳಿದೆನೋ ಮೇ
ಣಾವ ಧರ್ಮವನಳಿದೆನೋ ತನ
ಗಾವ ಪರಿ ಪರಿಭವ ಮಹೀರುಹ ಫಲಿತವಾಯ್ತೆಂದ ೩೮

ಈತ ದಿಟಕೆ ಪುಳಿಂದನೇ ವಿ
ಖ್ಯಾತ ನರ ತಾನಲ್ಲಲೇ ದಿಟ
ಜಾತ ಪಾರ್ಥನೆ ತಾ ನಿಧಾನಿಸೆ ಶಬರನಿವನಲ್ಲ
ಈತ ಪಲ್ಲಟವಾದನೋ ಮೇಣ್
ಶ್ವೇತ ತುರಗನ ಪಲ್ಲಟವೊ ಕುಂ
ತೀತನುಜ ತಾನಲ್ಲ ನಿಶ್ಚಯವೆನುತ ಚಿಂತಿಸಿದ ೩೯

ಅರಿದನೇ ಶಿವನೆಂದು ದೈವದ
ಸರಿಯು ಬಲುಹನು ಕಂಡೊಡೆಯು ದಿಟ
ವರಿಯಬಹುದೆ ರಹಸ್ಯ ಮಾಯಾ ಗೋಪಿತಾತ್ಮಕನ
ಅರುಹಿಕೊಡವೇ ವೇದ ಶಿರನೆ
ಚ್ಚರಿಸಿ ತನ್ನನಖಂಡ ಚಿನ್ಮಯ
ದರಿವು ತಾನೆಂದಾವನರಿವನು ರಾಯ ಕೇಳೆಂದ ೪೦

ಹಂದಿಯೇತಕೆ ತನಗೆ ಬನದ ಪು
ಳಿಂದನಲಿ ಸೆಣಸಾಗಲೇತಕೆ ಪು
ಳಿಂದನೇ ಮಾನ್ಯಕನು ನಾವವಮಾನ್ಯರಾದೆವಲೆ
ಇಂದುಮೌಳಿಯುಪೇಕ್ಷೆಯೋ ತಾ
ನಿಂದು ಶಿವಪದ ಭಕ್ತಿ ಶೂನ್ಯನೊ
ಮಂದಭಾಗ್ಯನು ತಾನಲಾ ಹಾಯೆನುತ ಚಿಂತಿಸಿದ ೪೧

ಏಕೆ ಚಿಂತೆ ವೃಥಾ ಮನೋವ್ಯಥೆ
ಕಾಕಲಾ ನಾನಜ್ಞನಾಗೆ ಪಿ
ನಾಕಿ ಮಾಡುವುದೇನು ಮರೆಯೊಗುವೆನು ಮಹೇಶ್ವರನ
ಈ ಕಿರಾತನ ಹರಿಬವನು ಬಳಿ
ಕೇಕೆ ನಿಮಿಷಕೆ ಗೆಲುವೆನೆನುತ ವಿ
ವೇಕ ಸಿರಿಯ ಕಟಾಕ್ಷಚಿತ್ತಕೆ ಮಾರಿದನು ಮನವ ೪೨

ಮಣಲ ಲಿಂಗವ ಮಾಡಿದನು ನಿ
ರ್ಗುಣನ ಸಗುಣಾರಾಧನೆಯ ಮ
ನ್ನಣೆಗಳಲಿ ವಿಸ್ತರಿಸಿದನು ವಿವಿಧಾಗಮೋಕ್ತದಲಿ
ಕಣಗಿಲೆಯ ಬಂದುಗೆಯ ಕಕ್ಕೆಯ
ಸಣಬಸರಿಸದ ಕುಸುಮದಲಿ ರಿಪು
ಗಣ ಭಯಂಕರನರ್ಚಿಸಿದನಂಧಾಸುರಾಂತಕನ ೪೩

ಅಮಲ ಶೈವಸ್ತವವ ಹೇಳಿದು
ನಮಿಸಿದನು ಬಲವಂದು ಪುನರಪಿ
ವಿಮಲಮತಿ ವೈಯಿಕ್ಕಿದನು ನಿಜ ಭಾವಶುದ್ಧಿಯಲಿ
ಕಮಲಭವ ಸುರವಂದ್ಯ ಗಿರಿಜಾ
ರಮಣ ಭಕ್ತಕುಟುಂಬಿ ದೇವೋ
ತ್ತಮ ತ್ರಿಯಂಬಕ ಪುಷ್ಟಿವರ್ಧನ ಕರುಣಿಸುವುದೆಂದ ೪೪

ಗೆಲಿದನೆನ್ನನು ಶಬರನೀತನ
ಗೆಲುವ ಶಕ್ತಿಯ ಕೊಡು ಕಿರಾತನ
ಬಲುಹು ಭಂಗಿಸಿತೆನ್ನ ಬಿಂಕದವೊಡೆಯ ನೀನಿರಲು
ಹಲವು ಮಾತೇನಿವನ ಮುರಿವ
ಗ್ಗಳಿಕೆಯನೆ ಕೃಪೆ ಮಾಡೆನುತ ಪರ
ಬಲ ಭಯಂಕರ ಭುಜವನೊದರಿಸುತಿತ್ತ ಮುಂದಾದ ೪೫

ಕಾಣಬಹುದೋ ಶಬರ ನಿನ್ನೀ
ಪ್ರಾಣವೆನ್ನಾಧೀನವರಿಯಾ
ಸ್ಥಾಣುವಿನ ಬಲುಹುಂಟು ಹಿಂಡುವೆನಿನ್ನು ನಿನ್ನಸುವ
ಗೋಣ ಮುರಿವೆನು ಮಿಡುಕಿದೊಡೆ ಶಿವ
ನಾಣೆ ಬಾ ಸಮ್ಮುಖಕೆ ಹಾಣಾ
ಹಾಣಿಗಿನನುವಾಗೆನುತಲೆವೆಯಿಕ್ಕದೀಕ್ಷಿಸಿದ ೪೬

ಕಂಡನರ್ಜುನನೀ ಕಿರಾತನ
ಮಂಡೆಯಲಿ ತಾ ಮಳಲ ಲಿಂಗದ
ಮಂಡೆಯಲಿ ಪೂಜಿಸಿದ ಬಹು ವಿಧ ಕುಸುಮ ಮಂಜರಿಯ
ಕಂಡನಿತ್ತಲು ಮುರಿದು ಪುನರಪಿ
ಕಂಡನೀ ಶಬರಂಗಿದೆತ್ತಣ
ದಂಡಿಯೋ ಹಾಯೆನುತ ಸೈವೆರಗಾದನಾ ಪಾರ್ಥ ೪೭

ಆಗಲಿದನಾರೈವೆನೆನುತವ
ನಾಗಮೋಕ್ತದಿ ಮತ್ತೆ ಲಿಂಗದ
ಮೇಗರೆಯ ನಿರ್ಮಾಲ್ಯವನು ಬೇರಿರಿಸಿ ಭಕ್ತಿಯಲಿ
ಹೂಗಳನು ತಿರಿದೊಟ್ಟಿ ಕರುಣಾ
ಸಾಗರನ ಬಲವಂದು ದಕ್ಷನ
ಯಾಗ ಹರನೆ ನಮಃಶಿವಾಯೆನುತಿತ್ತ ಮುಂದಾದ ೪೮

ಮತ್ತೆ ಕಂಡನು ಖಂಡ ಪರಶುವಿ
ನುತ್ತಮಾಂಗದಲೀಚೆಯಲಿ ಲಿಂ
ಗೋತ್ತಮಾಂಗದ ಮೇಲೆ ಕಾಣನು ಕುಸುಮ ಮಂಜರಿಯ
ತುತ್ತಿದವು ಕೌತುಕವ ರಂಜಿಸಿ
ಹೊತ್ತವದುಭುತವನು ಭಯಾನಕ
ವೆತ್ತ ರಸದಲಿ ಮುಳುಗಿದವು ಕಂಗಳು ಧನಂಜಯನ ೪೯

ಶಿವನಲಾ ಸಾಕ್ಷಾಚ್ಚತುರ್ದಶ
ಭುವನ ಕರ್ತುವಲಾ ಕಿರಾತ
ವ್ಯವಹರಣೆಯಲಿ ಸುಳಿದುದಸ್ಮದನುಗ್ರಹಾರ್ಥವಲ
ಎವಗಿದನಶನ ತಪದ ಪಿತ್ತದ
ಬವಣೆ ತಲೆಗೇರಿದುದಲಾ ಶಿವ
ಶಿವ ಮಹಾದೇವವೆನುತ ಮರುಗಿದನು ಕಲಿಪಾರ್ಥ ೫೦

ಹೃದಯವಿಬ್ಬಗಿಯಾಯ್ತು ಕಂಗಳು
ಬೆದರಿದವು ವೈವರ್ಣದಲಿ ತನು
ಗದಗದಿಸಿತಡಿಗಡಿಗೆ ಜಡಿದುದು ರೋಮ ಹರುಷದಲಿ
ಉದುರಿದವು ನೇತ್ರಾಂಬು ಬಿಂಕದ
ಬೆದರಿಕೆಯ ಮೂಢತೆಯ ತಿಳಿವಿನ
ಮುದದ ಭೇದದ ಗಾಯ ಘಾತಿಗೆ ಪಾರ್ಥನೊಳಗಾದ ೫೧

ಸ್ವೇದ ಜಲದಲಿ ಮಿಂದು ಪುನರಪಿ
ಖೇದಪಂಕದೊಳದ್ದು ಬಹಳ ವಿ
ಷಾದ ರಜದಲಿ ಹೊರಳಿ ಭಯರಸನದಿಯೊಳೀಸಾಡಿ
ಮೈದೆಗೆದು ಮರನಾಗಿ ದೆಸೆಯಲಿ
ಬೀದಿವರಿವುತ ವಿವಿಧ ಭಾವನ
ಭೇದದಲಿ ಮನ ಮುಂದುಗೆಡುತಿರ್ದುದು ಧನಂಜಯನ ೫೨

ಏಸು ಬಾಣದಳೆಚ್ಚರೆಯು ಹೊರ
ಸೂಸಿದವು ನಾನರಿದುದಿಲ್ಲ ಮ
ಹಾ ಶರೌಘವ ಕಳುಹೆ ನುಂಗಿದಡರಿದೆನೇ ಬಳಿಕ
ಆ ಶರಾಸನ ಖಡ್ಗವನು ಕೊಳ
ಲೈಸರೊಳಗೆಚ್ಚತ್ತನೇ ಹಿಂ
ದೇಸು ಜನ್ಮದ ಜಾಡ್ಯ ಜವನಿಕೆಯಾಯ್ತು ತನಗೆಂದ ೫೩

ಆವನನು ಜಪ ಯಜ್ಞದಲಿ ಸಂ
ಭಾವಿಸುವರಾವನ ಪದಾಂಬುಜ
ಸೇವೆಯಲಿ ಸನಕಾದಿಗಳು ಧನ್ಯಾಭಿಮಾನಿಗಳು
ಆವನೊಬ್ಬನು ನಾದಬಿಂದು ಕ
ಳಾ ವಿಶೇಷಾತೀತನೀತನೊ
ಳಾವು ಸಮರಕೆ ಸೆಣಸಿದೆವಲಾ ಶಿವಶಿವಾಯೆಂದ ೫೪

ಆವನನು ಯಜ್ಞಾದಿ ಕರ್ಮದೊ
ಳಾವನನು ನಿಯಮಾದಿ ಯೋಗದೊ
ಳಾವನನು ವಿವಿಧಾರ್ಚನಾಂಕಿತ ಭಕ್ತಿ ಮಾರ್ಗದಲಿ
ಆವನನು ಜೀವಾತ್ಮ ಚೈತ
ನ್ಯಾವಲಂಬನನೆಂದು ಭಜಿಸುವ
ರಾವು ರಣದಲಿ ಸೆಣಸಿದೆವಲಾ ಶಿವಶಿವಾಯೆಂದ ೫೫

ಲೋಕವಾವನ ಮಾಯೆಯಿಾ ಜಗ
ಕಾಕೆವಾಳರದಾರು ಚಂದ್ರ ದಿ
ವಾಕರ ಗ್ರಹರಾಶಿ ತಾರೆಗಳಾರ ತೇಜದಲಿ
ಲೋಕರಚನಾ ರಕ್ಷೆ ಸಂಹೃತಿ
ಯಾಕರಣೆ ತಾನಾರದಾ ಜಗ
ದೇಕ ದೈವದ ಕೂಡೆ ತೋಟಿಯೆ ಶಿವಶಿವಾಯೆಂದ ೫೬

ಜೀವರೂಪನು ಸಾಕ್ಷಿ ಕೂಟ
ಸಾ ವಲಂಬನ ಕರ್ತು ಚೇತನ
ನಾವನೀ ಕ್ಷೇತ್ರಜ್ಞನಂತರ್ಯಾಮಿ ಸಂಜ್ಞೆಯಲಿ
ಆವನಮಲ ಪ್ರತ್ಯಗಾತುಮ
ನಾವನುರು ಪರಮಾತ್ಮನೀಶ್ವರ
ನಾವನಾತನ ಕೂಡೆ ಕದನವೆ ಶಿವ ಶಿವಾಯೆಂದ ೫೭

ಸ್ಫುರದಲಿಂಗನು ಲಿಂಗ ಮೂಲೋ
ತ್ಕರನುದಾರವ್ಯಕ್ತ ಸದ ಸ
ತ್ಪರದ ಪರಶಿವನಾರು ಶೈವೋತ್ಕರುಷ ಲಿಂಗದಲಿ
ಪರಮ ಪರರೂಪಾತ್ಪರಾತ್ಪರ
ತರ ನಿರೂಪನದಾವನಾತನೊ
ಳರರೆ ನಾವೆಚ್ಚಾಡಿದೆವಲಾ ಶಿವ ಶಿವಾಯೆಂದ ೫೮

ಆ ಅಕಾರ ಉಕಾರ ವಿಮಲ ಮ
ಕಾರ ಯುಕ್ತೇಕಾಕ್ಷರದ ವಿ
ಸ್ತಾರಿಯಾವನಮಾತೃಕಾಕ್ಷರ ರೂಪನಕ್ಷಯನು
ಆರು ವಾಙ್ಮಯನಾರು ವಾಚೋ
ದೂರನಾರು ವಚೋ ನಿಯಾಮಕ
ನಾರವನ ಕೂಡೆವಗೆ ಕಲಹವೆ ಶಿವಶಿವಾಯೆಂದ ೫೯

ಗಾಹು ಹತ್ತಾಹತ್ತಿ ಗಡ ನಿ
ರ್ದೇಹನೊಡನೆ ಮಹಾ ಶರೌಘಕೆ
ಮೋಹು ಗಡ ಜೀವನವು ಮೃತ್ಯುಂಜಯನ ಸೀಮೆಯಲಿ
ಆಹ ಮೊದಲೆ ಗಡ ಸುನಿಗಮ
ವ್ಯೂಹದೂರನ ಕೂಡೆ ಹರನೊಡ
ನಾಹವಕೆ ಸಮಜೋಳಿ ನಾವ್ಗಡ ಶಿವ ಶಿವಾಯೆಂದ ೬೦

ಎವಗೆರಡು ಕಣು ವಿಶ್ವತೋ ಚ
ಕ್ಷುವಿನೊಡನೆ ಸಕ್ರೋಧ ದರುಶನ
ವೆವಗೆರಡು ಭುಜ ವಿಶ್ವತೋಭುಜನೊಡನೆ ಸಂಗ್ರಾಮ
ಭುವನ ಚರಣನ ವಿಶ್ವತೋಮುಖ
ಶಿವನ ನಮ್ಮಾ ಕಾಲು ನಾಲಗೆ
ಯವಗಡಿಸಿ ಗೆಲಲಾವ್ ಸಮರ್ಥರೆ ಶಿವಶಿವಾಯೆಂದ ೬೧

ಹೂಡಿ ಜಗವನು ಜಗದ ಜೀವರ
ಕೂಡೆ ಬೆರಸಿ ಸಮಸ್ತ ವಿಷಯದೊ
ಳಾಡಿ ಸೊಗಸುವನಾತನುಪಭೋಗ ಪ್ರಪಂಚದಲಿ
ಹೂಡದಳಿಯದ ಗಮಿಸಿ ಮರಳದ
ಕೂಡದಗಲದ ನಿತ್ಯತೃಪ್ತ ನಿ
ರೂಢನೊಡನೆಚ್ಚಾಡಿದೆವಲಾ ಶಿವಶಿವಾಯೆಂದ ೬೨

ಆವನೊಬ್ಬನಣೋರಣೀಯನ
ದಾವನುರು ಮಹತೋ ಮಹೀಯನ
ದಾವ ನಿರುತಂ ದೃಷ್ಟಿಸಂಗತ ವಿಶ್ವ ಸಮಯದಲಿ
ಆವನೊಬ್ಬನು ನಾಮರೂಪು ಗು
ಣಾವಲಂಬನನಲ್ಲದೀಶ್ವರ
ನಾವನಾತನೊಳೆಮಗೆ ತೋಟಿಯೆ ಶಿವಶಿವಾಯೆಂದ ೬೩

ಸೇವ್ಯನನು ಸತ್ಕೃತಿಗಳಲಿ ದೃ
ಷ್ಟವ್ಯನನು ದೃಢಚಿತ್ತದಲಿ ಮಂ
ತ್ರವ್ಯನಾ ಶ್ರೋತವ್ಯನನು ಸಂಕೀರ್ತಿತವ್ಯನನು
ಅವ್ಯಯನನಕ್ಷಯನನಭವನ
ನವ್ಯಥನನಜ್ಞಾನದಲಿ ಯೋ
ಗವ್ಯನೆಂದೇ ಸೆಣಸಿದೆವಲಾ ಶಿವಶಿವಾಯೆಂದ ೬೪

ಸ್ಫುರದಕಾರಾದಿಯಹ ಕಾರೋ
ತ್ತರದ ಶಬ್ದಬ್ರಹ್ಮಮಯ ವಿ
ಸ್ತರದ ಹಂತತ್ವದ ಮಹತ್ತತ್ವಾತಿಶಯ ಪದದ
ಪುರುಷ ಮೂಲ ಪ್ರಕೃತಿಗಳನು
ತ್ತರಿಸಿ ತೊಳತೊಳ ತೊಳಗಿ ಬೆಳಗುವ
ಪರಮ ಶಿವನಲಿ ಸೆಣಸಿದೆವಲಾ ಶಿವ ಶಿವಾಯೆಂದ ೬೫

ಸರಸಿಜಾಸನ ವಿಷ್ಣು ರುದ್ರೇ
ಶ್ವರ ಸದಾಶಿವರಾವಳೊಬ್ಬಳ
ಚರಣ ಸೇವಾ ಸಂಗದಲ್ಲಿಯೆ ಸುಪ್ರತಿಷ್ಠಿತರು
ಪರಮ ಶಕ್ತಿಯದಾವನಂಘ್ರಿಗೆ
ಶಿರವನೊಡ್ಡಿಹಳಾ ಮಹೋತ್ತಮ
ಪರಮ ಶಿವನಲಿ ಸೆಣಸಿದೆವಲಾ ಶಿವ ಶಿವಾಯೆಂದ ೬೬

ಈ ಪರಿಯಲರ್ಜುನನ ಮನದನು
ತಾಪವನು ಕಾಣುತ್ತ ಶಾಬರ
ರೂಪ ರಚನೆಯ ತೆರೆಯ ಮರೆಯಲಿ ಮೆರೆವ ಚಿನ್ಮಯದ
ರೂಪನವ್ಯಾಹತ ನಿಜೋನ್ನತ
ರೂಪ ರಸದಲಿ ನರನ ಚಿತ್ತದ
ತಾಪವಡಗಲು ತಂಪನೆರೆದನು ತರುಣಶಶಿಮೌಳಿ ೬೭

ಅರಸ ಕೇಳೈ ನಿಮ್ಮ ಪಾರ್ಥನ
ಪರಮ ಪುಣ್ಯೋದಯಘನೀಶನ
ಕರುಣವನು ಶುಕ ಸನಕ ಸಿದ್ಧಾದ್ಯರಿಗಗೋಚರದ
ನಿರುಪಮಿತ ನಿಜರೂಪವನು ವಿ
ಸ್ತರಿಸಿದನು ವಿವಿಧ ಪ್ರಭಾವೋ
ತ್ಕರದ ನಿರುಗೆಯ ತೋರಿದನು ಸುರಕೋಟಿ ಕೈಮುಗಿಯೆ ೬೮

ಬಲಿದ ಚಂದ್ರಿಕೆಯೆರಕವೆನೆ ತಳ
ತಳಿಸಿ ಬೆಳಗುವ ಕಾಯ ಕಾಂತಿಯ
ಪುಲಿದೊಗಲ ಕೆಂಜೆಡೆಯ ಕೇವಣದಿಂದು ಫಣಿಪತಿಯ
ಹೊಳೆವ ಹರಿಣನ ಅಕ್ಷಮಾಲಾ
ವಲಯದಭಯದ ವರದಕರ ಪರಿ
ಕಲಿತನೆಸೆದನು ಶಂಭು ಸದ್ಯೋಜಾತ ವಕ್ತ್ರದಲಿ ೬೯

ಹೊಳೆವ ಕುಂಕುಮ ಕಾಂತಿಯಲಿ ತಳ
ತಳಿಪ ತನು ಗಜಚರ್ಮದುಡುಗೆಯ
ಲಲಿತ ದಂತಪ್ರಭೆಯ ದರಹಸಿತಾನನಾಂಬುಜದ
ವಿಲಸಿತಾಭಯ ವರದ ಕರ ಪರಿ
ಲುಳಿತ ಪರಶು ದೃಢಾಕ್ಷಮಾಲಾ
ವಳಿಗಳೊಪ್ಪಿರೆ ವಾಮದೇವಾನನದಿ ರಂಜಿಸಿದ ೭೦

ಕಾಳಮೇಘ ಸುವರ್ಣದುರು ದಂ
ಷ್ಟ್ರಾಳಿ ಭೀಷಣದಮಳ ಜಪಮಣಿ
ಮಾಲಿಕೆಯ ಸುತಿ ಮುಖದ ಪಾಶಾಂಕುಶದ ಡಮರುಗದ
ಶೂಲ ಘನ ಖಟ್ವಾಂಗ ದ್ರುಹಿಣ ಕ
ಪಾಲ ಫಣಿವಲಯದ ಕರೋಟೀ
ಮಾಲೆಯಿಂದ ಮಹೋಗ್ರನೆಸೆದನಘೋರ ವಕ್ತ್ರದಲಿ ೭೧

ಪರಶು ಡಮರುಗ ಖಡ್ಗ ಖೇಟಕ
ಶರ ಧನುಃಶೂಲದ ಕಪಾಲದ
ಕರದ ರಕ್ತಾಂಬರದ ಫಣಿಪನ ಭೋಗ ಭೂಷಣದ
ಸ್ಫುರದಘೋರದಭೇದದಭಯದ
ಕರದ ಪರಶು ಮೃಗಂಗಳಲಿ ತ
ತ್ಪುರುಷ ಮುಖದಲಿ ಮೆರೆದನೆರಕದ ಮಿಂಚಿನಂದದಲಿ ೭೨

ಎಳೆಯ ಮಂತ್ರಿನ ಥಾಳವನು ಮಂ
ಕ್ಕಳಿಸಿದಂಗಚ್ಛವಿಯ ಭಯವರ
ಲುಳಿತ ಜಪಮಣಿ ವೇದ ಪಾಶಾಂಕುಶದ ಡಮರುಗದ
ಲಲಿತ ಖಟ್ವಾಂಗದ ಕಪಾಲದ
ಮೊಳೆವ ಶೂಲದ ಕರದ ನಿಗಮಾ
ವಳಿ ಶಿರೋಮಣಿ ಮೆರೆದನೀಶಾನ ವಕ್ತ್ರದಲಿ ೭೩

ಬೇರೆ ಬೇರುರಿಗಣ್ಣುಗಳ
ಫೂತ್ಕಾರದಹಿ ಬಂಧದ ಜಟಾ ಕೋ
ಟೀರ ಭಾರದ ಮುಖ ಚತುಷ್ಟಯ ಭುಜ ಚತುಷ್ಟಯದ
ವಾರಿಜಾಸನ ವಿಷ್ಣು ರುದ್ರಾ
ಧಾರನೀಶ್ವರ ಪಂಚ ವಕ್ತ್ರಾ
ಕಾರದಲಿ ಶಿವ ಮೆರೆದ ಪಂಚಬ್ರಹ್ಮ ರೂಪದಲಿ ೭೪

ಶ್ರುತಿಗಳುಪನಿಷದಾದ ಖಿಳ ದೇ
ವತೆಯರಾಕಲ್ಪಿತ ಕಿರಾತಾ
ಕೃತಿಯನುಳಿದರು ಸುಳಿದರೀಶನ ಸುತ್ತುವಳಯದಲಿ
ಸ್ಮಿತ ಮಧುರ ಮುಖಕಾಂತಿ ಕಲ್ಲೋ
ಲಿತ ಕಟಾಕ್ಷಚ್ಛವಿಯಲೀಶನ
ಧೃತಿಯಲೀಡಿರಿದೆಡದಲೆಸೆದರು ಗೌರಿದೇವಿಯರು ೭೫

ಸನಕ ನಾರದ ಭೃಗು ಪರಾಶರ
ತನುಜ ಭಾರದ್ವಾಜ ಗೌತಮ
ಮುನಿ ವಸಿಷ್ಠ ಸನತ್ಕುಮಾರನು ಕಣ್ವನುಪಮನ್ಯು
ವನಕೆ ಬಂದರು ಪಾರ್ಥ ಕೇಳಿದು
ನಿನಗೆ ಸಿದ್ಧಿ ಗಡೆಮಗೆ ಲೇಸಾ
ಯ್ತೆನುತ ವೈಯಿಕ್ಕಿದುದು ಹರನಂಘ್ರಿಯಲಿ ಮುನಿನಿಕರ ೭೬

ಜಯ ಜಯೆಂದುದು ನಿಖಿಳ ಜಗವ
ಕ್ಷಯನ ದರುಶನಕೆಂದು ಸುತಿ ಕೋ
ಟಿಯ ಗಡಾವಣೆ ಗಾಸಿಯಾದುದು ಹರನ ಗಲ್ಲಣೆಗೆ
ನಿಯುತವೇನೋ ಜನ್ಮಶತ ಸಂ
ಚಯದೊಳರರೆ ಕೃತಾರ್ಥನರ್ಜುನ
ಜಯವೆನಲು ಮೊಳಗಿದವು ಭೇರಿಗಳಮರ ಕಟಕದಲಿ ೭೭

ಬಿಟ್ಟ ಸೂಟಿಯೊಳೆದ್ದು ಹರುಷಕೆ
ಕೊಟ್ಟು ಮನವನು ನೋಡುತಿರ್ದನು
ನಟ್ಟ ದೃಷ್ಟಿಯೊಳೊಗುವ ಜಲದಲಿ ರೋಮ ಪುಳಕದಲಿ
ಬಿಟ್ಟು ಹಿಡಿದನು ಹರನ ಕಾಣದೆ
ತೊಟ್ಟ ಜಗೆಗಳ ರೋಮ ಹರುಷದ
ಲಿಟ್ಟೆಡೆಯ ವೈದವಕದರ್ಜುನ ನಿಂದು ಬೆರಗಾದ ೭೮

ಹರಹಿನಲಿ ಹೊದರೆದ್ದು ಹರುಷದ
ಹೊರಳಿಯಲಿ ಹೊಡಕರಿಸಿ ಚಿತ್ತವ
ತಿರುಹಿ ಹಿಡಿದನು ಮನಕೆ ಬುದ್ಧಿಯ ಹಮ್ಮು ಹಮ್ಮುಗೆಯ
ಕೊರಳುಗೊಳಿಸಿ ಕುಲಾಲ ಚಕ್ರದ
ಪರಿಬವಣೆಗೆಯ ಪಾಡಿನಲಿ ಕಾ
ತರಿಸುವನಿಗೆ ವೈಯನಿತ್ತನು ನೀಡಿ ಭುಜಯುಗವ ೭೯

ಕ್ಷಮಿಸುವುದು ಸರ್ವೇಶ ಸರ್ವೋ
ತ್ತಮ ವೃಥಾ ಸಂಭಟಾಭಿಮಾನ
ಭ್ರಮಿತನನು ಮೋಹಾಂಧಕೂಪ ಜಲಾವಗಾಹದಲಿ
ಸ್ತಿಮಿತನನು ದುರ್ಬೋಧ ವೇದ
ಭ್ರಮಿತನನು ಕಲ್ಯಾಣಪದ ನಿ
ರ್ಗಮಿತನನು ಕಾರುಣ್ಯನಿಧಿ ಕೈಗಾಯಬೇಕೆಂದ ೮೦

ಅರಿದರಿದು ಮತಿಗೆಟ್ಟ ಮಾನವ
ಕುರಿಯಲಾ ನೆರೆ ಕಂಡು ಕಂಡೆ
ಚ್ಚರದ ಖೂಳನಲಾ ವಿವೇಕದ ಮೂಗು ಮಾರಿಯಲ
ಬರಿಮನದ ಬಾಹಿರನೊಳಿನ್ನಲಿ
ಮರೆವುದಪರಾಧವನು ನಿನ್ನನೆ
ಮರೆವುದೈ ಕಾರುಣ್ಯನಿಧಿ ಕೈಗಾಯಬೇಕೆಂದ ೮೧

ದೇವ ದೇವ ಕೃಪಾಂಬುನಿಧಿ ಭ
ಕ್ತಾವಲಂಬನ ಭಕ್ತದೇಹಿಕ
ಸೇವಕಪ್ರಿಯ ಭೂತಭಾವನ ಭಾವನಾತೀತ
ದೇವವಂದಿತ ಕಾಲರೂಪ ಮ
ಹಾ ವಿಭವ ಭವರಹಿತ ಪಾವನ
ಪಾವಕಾಂಬಕ ಸುತಿಕುಟುಂಬಿಕ ಕರುಣಿಸುವುದೆಂದ ೮೨

ಜಯ ಜಗತ್ರಯನಾಥ ಭಕ್ತಾ
ಶ್ರಯ ಸದಾಶಿವ ಭಕ್ತವತ್ಸಲ
ಲಯವಿಹೀನ ಮಹೇಶ ಮನ್ಮಥಹರ ಮಹಾದೇವ
ಭಯರಹಿತ ಭಾಳಾಕ್ಷ ಲೋಕ
ವ್ಯಯಭವನ ದುರ್ಲಕ್ಷ್ಯ ದೇವ
ತ್ರಯ ನಮಸ್ಕೃತ ನಿಗಮ ಸತ್ಕೃತ ಕರುಣಿಸುವುದೆಂದ ೮೩

ಸರ್ವಗತ ಸರ್ವಜ್ಞ ಸರ್ವದ
ಸರ್ವಭಾವನ ಸರ್ವತೋಮುಖ
ಸರ್ವಪೂಜಿತ ಸರ್ವಸಾಧಕ ಸರ್ವಗುಣನಿಲಯ
ಸರ್ವ ಸರ್ವಾಶ್ರಯ ಸಮಾಹಿತ
ಸರ್ವಮಯ ಸರ್ವೇಶ್ವರೇಶ್ವರ
ಸರ್ವ ದುಃಖಾಪಹ ಮಹೇಶ್ವರ ಕರುಣಿಸುವುದೆಂದ ೮೪

ರೂಪರಹಿತ ಸರೂಪ ನಿರ್ಮಲ
ರೂಪ ವಿಶ್ವಾಧಾರ ಸದಸ
ದ್ರೂಪರೂಪವ್ಯೋಮ ರೂಪಕ ಸರ್ವತೋರೂಪ
ರೂಪ ರಸಗಂಧಾದಿ ವಿಷಯ ವಿ
ರೂಪ ರೂಪಾತೀತ ಸಂವಿ
ದ್ರೂಪ ವಿಮಲ ವಿರೂಪಲೋಚನ ಕರುಣಿಸುವುದೆಂದ ೮೫

ರಚಿತ ಮಾಯ ವಿಮಾಯ ಮಾಯಾ
ನಿಚಿತ ಮಾಯಾಧಾರ ಮಾಯಾ
ರುಚಿರ ಮಾಯಾರೂಪ ಮಾಯಾಮಯ ಜಗನ್ಮಾಯ
ಶುಚಿ ಸತೇಜೋಬಲ ಹಿರಣ್ಯ
ಪ್ರಚಯತೇಜ ಸುತೇಜ ಗೌರೀ
ಕುಚಯುಗಾಂಕಿತವಕ್ಷನೀಕ್ಷಿಸಿ ಕರುಣಿಸುವುದೆಂದ ೮೬

ಪರಮಹಂಸ ಪರಾತ್ಮ ಪರಮೇ
ಶ್ವರ ಪರಬ್ರಹ್ಮೈಕ್ಯ ವಿಗ್ರಹ
ಪರಮಶಿವ ಪರತತ್ವರೂಪ ಪರಾತ್ಪರಾನಂದ
ಪರಮಗುಣ ಪರಶಕ್ತಿ ವಾಗೀ
ಶ್ವರ ಪರಾರ್ತಿಹರೇಶ ಪರ ಶಂ ೮೭
ಕರ ಪರಂಜ್ಯೋತಿಯೆ ಪರೋತ್ತಮ ಕರುಣಿಸುವುದೆಂದ

ಲಿಂಗಮಯ ನಿರ್ಲಿಂಗ ತೇಜೋ
ಲಿಂಗ ಲಿಂಗಾತ್ಮಕ ಸದಾಶಿವ
ಲಿಂಗ ನಿರ್ಮಳ ಲಿಂಗ ಲಿಂಗಸ್ಥಿತ ಮಹಾಲಿಂಗ
ಲಿಂಗ ವಿಲಸಿತ ಲಿಂಗ ಚಿನುಮಯ
ಲಿಂಗ ಚೇತನ ಲಿಂಗ ದುರ್ಗಾ
ಲಿಂಗಿತಾಂಗ ವಿಲಾಸ ಶಂಕರ ಕರುಣಿಸುವುದೆಂದ ೮೮

ನಿರವಧಿಕ ನಿರ್ಮಾಯ ನಿಸ್ಪೃಹ
ನಿರುಪಮಿತ ನಿರ್ದ್ವಂದ್ವ ನಿರ್ಗುಣ
ನಿರವಯವ ನಿರ್ಲೇಪ ನಿರವಗ್ರಹ ನಿರಾಧಾರ
ನಿರುಪಮ ನಿರಾಮಯ ನಿರಂತರ
ನಿರವಶೇಷ ನಿರಂಗ ನಿರ್ಮಲ
ನಿರತಿಶಯ ನಿಷ್ಕಳ ಮಹೇಶ್ವರ ಕರುಣಿಸುವುದೆಂದ ೮೯

ವಾಮದೇವ ದುರಂತ ವಿಮಲ
ವ್ಯೋಮಕೇಶ ಕೃತಾಂತಹರ ನಿ
ಸ್ಸೀಮ ಮೃತ್ಯುಂಜಯ ಸಮಂಜಸ ಸರ್ವತೋಭದ್ರ
ಭೀಮ ಭರ್ಗ ಕಪರ್ದಿ ಕಲ್ಪಿತ
ನಾಮ ರೂಪತ್ರಯ ವೃಷಧ್ವಜ
ಕಾಮಹರ ಕರುಣಾ ಮಹಾರ್ಣವ ಕರುಣಿಸುವುದೆಂದ ೯೦

ಹರಹರಾ ತ್ರೈಮೂರ್ತಿ ರೂಪನು
ಧರಿಸಿಯತುಳ ಮಹಾಷ್ಟಮೂರ್ತಿಯ
ಧರಿಸಿಯನುಪಮ ವಿಶ್ವಮೂರ್ತಿಯ ಧರಿಸಿ ರಂಜಿಸುವ
ಪರಿಯನರಿವವರಾರು ದೇವಾ
ಸುರ ಮುನೀಶರಿಗರಿದು ಕೃಪೆಯಿಂ
ಕರುಣಿಸಲು ಬಂದೈ ಮಹಾದೇವೆಂದನಾ ಪಾರ್ಥ ೯೧

ದೇವ ಸುರ ದನುಜೇಶವಂದಿತ
ದೇವ ಮನು ಮುನಿನಿಕರ ಪೂಜಿತ
ದೇವ ತತ್ವಾಕಾರ ಭಾವಿಪೊಡತಿ ನಿರಾಕಾರ
ದೇವ ಸಾಕಾರದಲಿ ನಿಜ ಭ
ಕ್ತಾವಳಿಯನುದ್ಧರಿಪ ಶಿವ ಮಾ
ದೇವ ಕರುಣಿಸಿದೈಯನಾಥಂಗೆಂದನಾ ಪಾರ್ಥ ೯೨

ಹರನೆ ಗಂಗಾಧರನೆ ಗಿರಿಜಾ
ವರನೆ ಶಶಿಶೇಖರನೆ ದಕ್ಷಾ
ಧ್ವರಹರನೆ ಶಂಕರನೆ ನಿಜಭಕ್ತರ ಮನೋಹರನೆ
ಕರುಣಿಸುವುದುದ್ಧರಿಸುವುದು ಸಂ
ಹರಿಸು ಮತ್ಪರಿಭವವನೆಂದುರು
ತರದ ಭಕ್ತಿಯಲಂದು ಸೈಗೆಡೆದಿರ್ದನಾ ಪಾರ್ಥ ೯೩

ಧರಣಿಪತಿ ಕೇಳೀಶನೀತನ
ಹೊರೆಗೆ ಬಿಜಯಂಗೈದು ಪಾರ್ಥನ
ಶಿರವ ಹಿಡಿದೆತ್ತಿದನು ಬಿಗಿಯಪ್ಪಿದನು ಬರಸೆಳೆದು
ಮರುಳು ಮಗನೆ ಮಹಾ ತಪಸ್ಸಂ
ಚರಣೆಯಲಿ ನೊಂದೈಯೆನುತ ಕಡು
ಗರುಣೆ ಕರುಣಾಮೃತ ಸಮುದ್ರದೊಳದ್ದಿದನು ನರನ ೯೪

ಕೂಡೆ ಮೈದಡವಿದನು ಚೈಮುಂ
ಡಾಡಿದನು ಮನ ನೋಯದಿರು ನೀ
ಮಾಡಿದುಪಹತಿಯೆಂಬುದೆಮಗರ್ಚನೆ ನಮಸ್ಕಾರ
ಕೋಡದಿರು ಕೊಂಕದಿರು ಭಕ್ತಿಗೆ
ನಾಡೆ ಮೆಚ್ಚಿದೆನೆನ್ನ ಚಿತ್ತಕೆ
ಖೋಡಿಯಿಲ್ಲೆಲೆ ಮಗನೆ ಗುಹ ಗಣಪತಿಗಳಾಣೆಂದ ೯೫

ನರನು ನೀ ಪೂರ್ವದಲಿ ಪೀತಾಂ
ಬರನ ವಿಮಲಾಂಶ ಪ್ರಸೂತನು
ಪರಮಋಷಿ ನೀನೆನ್ನ ಭಕ್ತನು ಚಿಂತೆ ಬೇಡಿನ್ನು
ವರದನಾದೆನು ಮಗನೆ ಶಸ್ತ್ರೋ
ತ್ಕರವನಿದನೀ ಮುನ್ನ ಕೊಳ್ಳೆಂ
ದುರುತರ ಪ್ರೇಮದಲಿ ಕೊಟ್ಟನು ಖಡ್ಗ ಶರ ಧನುವ ೯೬

ಸಲಿಸುವೆನು ನೀ ಬೇಡಿದುದ ನಿ
ಸ್ಖಲಿತವಂಜದಿರಿನ್ನು ಸಾಕೆನೆ
ಸುಲಭ ನೀ ಭಕ್ತರಿಗೆ ಭಯವಿನ್ನೇಕೆ ನಮಗೆನುತ
ಸಲಿಸು ಪಾಶುಪತಾಸ್ತ್ರವನು ವೆ
ಗ್ಗಳದ ಬೊಮ್ಮ ಶಿರೋಸ್ತ್ರವನು ಕೈ
ಗೊಳಿಸುವುದು ಕೃಪೆಯುಳ್ಳೊಡೆಂದನು ನಗುತ ಕಲಿಪಾರ್ಥ ೯೭

ಸವಡಿ ನುಡಿಯುಂಟೇ ಚತುರ್ದಶ
ಭುವನ ದಾಹವದಕ್ಷವೀ ಬಾ
ಣವನು ಕೊಟ್ಟೆನು ಮಗನೆ ಬೊಮ್ಮಶಿರೋ ಮಹಾಶರವ
ದಿವಿಜ ದನುಜ ಭುಜಂಗಮಾದಿಗ
ಳವಗಡಿಸಲುರೆ ಹೆಚ್ಚುವುದು ಸಂ
ಭವಿಸಿದಾಹುತಿಯೆಂದು ಶರವುದ್ದಂಡ ಬಲವೆಂದ ೯೮

ಸರಸಿಯಲಿ ಮಿಂದಾಚಮನ ವಿ
ಸ್ತರಣೆಯೆಲ್ಲವ ಮಾಡಿ ಶೂಲಿಯ
ಚರಣದಲಿ ಮೈಯಿಕ್ಕಿ ನಿಂದನು ಭಾವಶುದ್ಧಿಯಲಿ
ಸರಳ ಸಾಂಗೋಪಾಂಗ ಮಂತ್ರೋ
ಚ್ಚರಣ ಸಂಹೃತಿ ಮೋಕ್ಷವನು ವಿ
ಸ್ತರಿಸುತ ರಹಸ್ಯದಲಿ ಕೊಟ್ಟನು ಪಾಶುಪತ ಶರವ ೯೯

ಜಗವುಘೇಯೆಂದುದು ಜಯಧ್ವನಿ
ಗಗನದಲಿ ಗಾಢಿಸಿತು ಹೂವಿನ
ಮುಗುಳ ಸರಿವಳೆ ಸುರಿದುದೀಶ್ವರನಂಘ್ರಿ ಕಮಲದಲಿ
ಢಗೆಯ ತಳಿ ಮುರಿದುದು ಮನೋರಥ
ದಗಳು ತುಂಬಿತು ನರನ ಮನ ಬು
ದ್ಧಿಗಳು ನೆರೆ ಸಿಲುಕಿತ್ತು ಹರುಷೋತ್ಸವದ ದಾಳಿಯಲಿ ೧೦೦

ಹರನ ಕೋಮಲಪಾಣಿ ಕಮಲ
ಸ್ಪರುಶ ಪೀಯೂಷದಲಿ ಮುಳುಗಿದ
ನರನ ತನು ನಿರ್ಮೋಕ ಮುಕ್ತ ಭುಜಂಗನಂದದಲಿ
ಕಿರಣ ಲಹರಿಯ ಲಳಿಯ ದಿವ್ಯೋ
ತ್ಕರದ ಚಪಲಚ್ಛವಿಯ ಚಾರು
ಸ್ಫುರಣದಲಿ ಬೋಳೈಸಿದುದು ಸುರ ನರರ ಕಣ್ಮನವ ೧೦೧

ಸುರಮುನೀಶರ ವೇದ ಮಂತ್ರೋ
ಚ್ಚರಣ ನಾದದ ಗರುಡ ಗಂಧ
ರ್ವರ ಮಹಾ ಸ್ತುತಿರವದ ತುಂಬುರ ನಾರದಾದಿಗಳ
ವರ ರಸಾನ್ವಿತ ಗೀತದೂರ್ವಶಿ
ಯರ ಸುನೃತ್ಯದ ದಿವ್ಯವಾದ್ಯದ
ಹರನ ಕರುಣಾಂಬುಧಿಯಲೋಲಾಡಿದನು ಕಲಿಪಾರ್ಥ ೧೦೨

ಧರೆಗೆಸೆವ ಧರ್ಮಾರ್ಥ ಕಾಮೋ
ತ್ಕರವನನುಪಮ ಮೋಕ್ಷಪದವನು
ಧುರದೊಳಹಿತರ ಗೆಲುವ ಶೌರ್ಯೋನ್ನತಿಯ ಸಾಹಸವ
ಕರುಣಿಸಿದನಪ್ಪಿದನು ಕರೆದನು
ಗಿರಿತನುಜೆ ನೀನುದ್ಧರಿಪುದೀ
ಪರಮ ಭಕ್ತನನೆನಲು ಕರುಣದೊಳೀಕ್ಷಿಸಿದಳಗಜೆ ೧೦೩

ಗಿರಿಜೆ ತ್ರಿಜಗನ್ಮಾತೆ ರಕ್ಷಿಸು
ಪರಮ ಕರುಣಾಮೂರ್ತಿ ಜಗದೊಳು
ಸಿರಿ ಸರಸ್ವತಿ ಚಂಡಿ ದುರ್ಗಿಯರೆಂಬ ನಾಮದಲಿ
ಚರಿಸುತಿಹ ನಿನ್ನೇಕ ಮೂರ್ತಿಯ
ಪರಿಯನರಿವವರಾರೆನುತ ತ
ಚ್ಚರಣ ಯುಗಳಕ್ಕೆರಗಿ ಪುಳಕಿತನಾದನಾ ಪಾರ್ಥ ೧೦೪

ಕಂಜನಾಭನ ಮೈದುನನೆ ಬಾ
ಅಂಜದಿರು ನಿನಗಾಂತ ರಿಪುಗಳ
ಭಂಜಿಸುವ ಸಾಮರ್ಥ್ಯದನುವನು ತಳೆದು ರಂಜಿಸುವ
ಅಂಜನಾಸ್ತ್ರವನಿತ್ತೆ ಮಗನೆ ಧ
ನಂಜಯನೆ ನಿನಗೆನುತ ಕರುಣದಿ
ಮಂಜುಳಾ ರವದಿಂದ ತಚ್ಛಸ್ತ್ರವನು ಬೆಸಸಿದಳು ೧೦೫

ಒಂದು ದಶ ಶತ ಸಾವಿರದ ಹೆಸ
ರಿಂದ ಲಕ್ಷವು ಕೋಟಿಯಗಣಿತ
ದಿಂದ ನಿನಗಾಂತದಟ ರಿಪುಗಳ ತಿಂದು ತೇಗುವುದು
ಬಂದು ಬೆಸನನು ಬೇಡುವುದು
ತಾನೊಂದು ಶರ ರೂಪಾಗೆನುತ ಮುದ
ದಿಂದ ವರ ಮಂತ್ರೋಪದೇಶವನಿತ್ತಳರ್ಜುನಗೆ ೧೦೬

ಕರಿಮುಖನ ಷಣ್ಮುಖನ ಚರಣ
ಕ್ಕೆರಗಿ ನುತಿಸುತ್ತಿರಲು ಪಾರ್ಥನ
ಪರಮ ಭಕ್ತಿಗೆ ಮೆಚ್ಚಿ ತೆಗೆದಪ್ಪಿದರು ಕರುಣದಲಿ
ವರ ಮಹಾಸ್ತ್ರಂಗಳನು ಮಂತ್ರೋ
ತ್ಕರವನವರೊಲಿದಿತ್ತು ಗೆಲು ನೀ
ಧುರದೊಳಹಿತರನೆಂದು ಪರಸಿದರಾ ಧನಂಜಯನ ೧೦೭

ಸರಳ ಸಾಂಗೋಪಾಂಗವನು ನಿನ
ಗರುಹಿದೆನು ನೀನಿನ್ನು ಶಕ್ರನ
ಪುರಕೆ ನಡೆ ನಿನ್ನುತ್ತರೋತ್ತರ ಕಾರ್ಯಗತಿಗಳಿಗೆ
ಹರಿ ಸಹಾಯನು ನಮ್ಮ ಸತ್ವದ
ಪರಮರೂಪಾತನು ಕಣಾ ನೀ
ನರಿದಿರೆಂದು ಮಹೇಶ ಬೀಳ್ಕೊಟ್ಟನು ಧನಂಜಯನ ೧೦೮

ನಿಮ್ಮ ಕಥೆ ವೇದೋಕ್ತವಾಗಲಿ
ನಿಮ್ಮ ಚರಿತ ಸುಚರಿತವಾಗಲಿ
ನಿಮ್ಮ ಕಥನಾಮೃತವನಾಲಿಸಿ ಕೇಳ್ದರಘ ಕೆಡಲಿ
ನಿಮ್ಮ ನಿಂದಿಸುವವರುಗಳು ದು
ಷ್ಕರ್ಮಿಗಳು ಪಾತಕರು ತಾನಿದು
ನಮ್ಮ ಮತವೆಂದಭವ ಹರಸಿದನಾ ಧನಂಜಯನ ೧೦೯

ದೇವಿಯರು ಗುಹ ಗಣಪ ಮುಖ್ಯ ಗ
ಣಾವಳಿಗೆ ಪೊಡಮಟ್ಟನವರ ಕೃ
ಪಾವಲೋಕನದಿಂದ ಹೊಂಪುಳಿ ಹೋದನಡಿಗಡಿಗೆ
ದೇವ ಬಿಜಯಂಗೈದ ರಜತ
ಗ್ರಾವಶಿಖರಕೆ ಮನದೊಳಗೆ ಸಂ
ಭಾವಿಸಿದನೀ ವೀರನಾರಾಯಣನ ಮೈದುನನ ೧೧೦

ಏಳನೆಯ ಸಂಧಿ

ಸೂ. ಹರನ ಪಾಶುಪತಾಸ್ತ್ರ ಲಾಭೋ
ತ್ಕರುಷ ಹರ್ಷೋತ್ಸವದಲಿಂದ್ರನ
ಪುರವ ಹೊಕ್ಕನು ಪಾರ್ಥನೆಸೆದನು ಶಕ್ರತೇಜದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ವರ ಕೈಲಾಸವಾಸಿಯ
ಬೀಳುಗೊಂಡನು ತದ್ವಿಯೋಗಲಿಂದ್ರ ಕೀಲದಲಿ
ಮೇಲುದುಗುಡದಲಸ್ತ್ರ ಲಾಭವ
ನಾಲಿಸದೆ ಶಂಕರ ಪದಾಂಬುಜ
ದೋಲಗದ ಸಿರಿ ತಪ್ಪಿತೆನುತುಮ್ಮಳಿಸಿದನು ಪಾರ್ಥ ೧

ಮರುಳ ದೇವಾರ್ಚನೆಯೊ ಕನಸಿನ
ಸಿರಿಯೊ ಶಿಶುವಿನ ಕೈಯ ರತ್ನವೊ
ಹರಿಯ ಹೂಮಾಲೆಯೊ ಮದೀಯ ವಿವೇಕ ವಿಭ್ರಮವೊ
ಹರನನೀ ಚರ್ಮಾಕ್ಷಿಯಲಿ ಗೋ
ಚರಿಸೆ ಬೇಡಿದುದಂಬು ಮರ್ತ್ಯದೊ
ಳಿರವು ಮರಳಿ ಭಾಪೆನ್ನ ಪುಣ್ಯವೆನುತ್ತ ಬಿಸುಸುಯ್ದ ೨

ಅರಸ ಕೇಳದ್ಭುತವನಿತ್ತಲು
ಚರಮ ದಿಗ್ಭಾಗದಲಖಿಳ ಜಲ
ಚರ ನಿಕಾಯದ ಮುಂಗುಡಿಯಲಿಕ್ಕೆಲದ ಫಣಿಕುಲದ
ವರ ನದೀ ನದ ಕೋಟಿಗಳ ಸಾ
ಗರದ ಪರಿವಾರದಲಿ ಬಂದನು
ವರುಣನಮರೇಂದ್ರನ ಕುಮಾರನ ಕಾಂಬ ತವಕದಲಿ ೩

ವಿಕಟ ರಾಕ್ಷಸ ಯಕ್ಷಜನ ಗು
ಹ್ಯಕರು ಕಿನ್ನರಗಣ ಸಹಿತ ಪು
ಷ್ಪಕದಲೈತಂದನು ಧನೇಶ್ವರನಾ ತಪೋವನಕೆ
ಸಕಲ ಪಿತೃಗಣ ಸಹಿತ ದೂತ
ಪ್ರಕರ ಧರ್ಮಾಧ್ಯಕ್ಷರೊಡನಂ
ತಕನು ಬೆರಸಿದನಿಂದ್ರಕೀಲ ಮಹಾ ವನಾಂತರವ ೪

ಹಿಡಿಯ ಸಾಲಿನ ಸತ್ತಿಗೆಯ ಬಲ
ಕೆಡಕೆ ಕೆದರುವ ಸೀಗುರಿಯ ಮುಂ
ಗುಡಿಯ ವಿದ್ಯಾಧರ ಮಹೋರಗ ಯಕ್ಷ ರಾಕ್ಷಸರ
ಜಡಿವ ಕಹಳಾರವದ ನೆಲನು
ಗ್ಗಡಣೆಗಳ ಕೈವಾರಿಗಳ ಗಡ
ಬಡೆಯ ಗರುವಾಯಿಯಲಿ ಗಗನದಿನಿಳಿದನಮರೇಂದ್ರ ೫

ಕಂಡನನಿಬರ ಬರವನೊಲಿದಿದಿ
ರ್ಗೊಂಡನವರವರುಚಿತದಲಿ ಮುಂ
ಕೊಂಡು ಮನ್ನಿಸಿ ಮನವ ಪಡೆದನು ಲೋಕಪಾಲಕರ
ಖಂಡ ಪರಶುವಿನಸ್ತ್ರವನು ಕೈ
ಕೊಂಡೆ ನಿನಗೇನರಿದು ನೀನು
ದ್ದಂಡ ಬಲನೆಂದನಿಬರುಪಚರಿಸಿದರು ಫಲುಗುಣನ ೬

ಆ ಮಹಾಸ್ತ್ರಕೆ ಬಳುವಳಿಯ ಕೊ
ಳ್ಳೀ ಮದೀಯಾಸ್ತ್ರವನೆನುತ ಸು
ತ್ರಾಮನಿತ್ತನು ದಿವ್ಯಬಾಣವನಿಂದ್ರ ಸಂಜ್ಞಕವ
ಸಾಮವರ್ತಿಕ ದಂಡ ವಾರುಣ
ತಾಮಸದ ಸಮ್ಮೋಹನವಿದೆಂ
ದಾ ಮಹಾಂತಕ ವರುಣ ಧನದರು ಕೊಟ್ಟರಂಬುಗಳ ೭

ಎಲೆ ಧನಂಜಯ ನಿನಗಿದೇನ
ಗ್ಗಳದ ಶರವೇ ನಿನ್ನ ಭಕ್ತಿಗೆ
ಸಿಲುಕಿದನು ಶಿವನಾತನಂಬಿದೆ ನಿನ್ನ ಸೀಮೆಯಲಿ
ಸುಲಭ ನಿನಗಿಂದಮಳ ಲಕ್ಷ್ಮೀ
ನಿಲಯ ನೀನೇ ಪೂರ್ವದಲಿ ನಿ
ರ್ಮಲಿನ ನರ ಋಷಿಯೆಂದು ಹರಿ ತೆಗೆದಪ್ಪಿದನು ಮಗನ ೮

ಕೃತ ತಪಸ್ಸಿಂ ಭಿನ್ನ ಖೇದ
ಕ್ಷತ ಶರೀರ ವ್ಯಥೆಯನಮರಾ
ವತಿಯೊಳಗೆ ಕಳೆ ರಥಸಹಿತ ಕಳುಹುವೆನು ಮಾತಲಿಯ
ಕ್ರತುಶತದ ಕೈಗಾಣಿಕೆಯ ದೀ
ಕ್ಷಿತರ ಸಿರಿಯಂತರವ ಮನವಾ
ರತೆಯದೆಂತುಂಟೊ ಕಾಣಬೇಹುದು ಪಾರ್ಥ ನೀನೆಂದ ೯

ಹೈ ಹಸಾದವು ನೂರು ಯಜ್ಞದ
ಮೋಹನಾಡನು ಮೆಟ್ಟಲೆಮ್ಮ
ಹೂಹೆಗಳಿಗಳವಡುವದೊಲ್ಲೆವೆ ನಿಮ್ಮ ಕರುಣದಲಿ
ಐಹಿಕದಲಾಮುಷ್ಮಿಕದ ಸಂ
ನ್ನಾಹ ಸಂಭವಿಸುವುದೆ ನಿಷ್ಪ
ತ್ತ್ಯೂಹವೆಂದೆರಗಿದನು ಫಲಗುಣನಿಂದ್ರನಂಘ್ರಿಯಲಿ ೧೦

ಬೀಳುಂಗೊಟ್ಟನು ನರನನೀ ದಿ
ಕ್ಪಾಲರಂತರ್ಧಾನದೊಡನೆ ಸ
ಮೇಳರಾದರು ಶಕ್ರಸಾರಥಿ ಸುಳಿದನಭ್ರದಲಿ
ಜಾಳಿಗೆಯ ಮಣಿವೆಳಗುಗಳ ವೈ
ಹಾಳಿಗಳ ವೈಡೂರ್ಯದೀಪ್ತಿ ನಿ
ವಾಳಿಗಳ ಸುಪತಾಕೆ ಬೆಳಗುವ ಹೇಮರಥ ಸಹಿತ ೧೧

ಅರಸ ಕೇಳ್ಳೈ ಹತ್ತು ಸಾವಿರ
ತುರಗ ನಿಕರದ ಲಳಿಯ ದಿವ್ಯಾಂ
ಬರದ ಸಿಂಧದ ಸಾಲ ಸತ್ತಿಗೆಗಳ ಪತಾಕೆಗಳ
ಖರರುಚಿಯ ಮಾರಾಂಕವೋ ಸುರ
ಗಿರಿಯ ಸೋದರವೋ ಮೃಗಾಂಕನ
ಮರುದಲೆಯೊ ಮೇಣೆನಲು ರಥ ಹೊಳೆದಿಳಿದುದಂಬರದಿ ೧೨

ಏನಿದಚ್ಚರಿ ಮೇಲೆ ಮೇಲೆ ನ
ವೀನ ದರ್ಶನವೆನ್ನ ಪುಣ್ಯ
ಸ್ಥಾನವೈಸಲೆಯೆನುತ ನರನಿದಿರಾದನಾ ರಥಕೆ
ನೀನಹೈ ಕಲಿಪಾರ್ಥನೆಂಬ ಮ
ಹಾ ನರೇಶ್ವರನೆನುತ ವಿಂಗೆ ಸ
ನ್ಮಾನಿಸುತ ಸುರಪತಿಯ ಸಾರಥಿ ನಿಲಿಸಿದನು ರಥವ ೧೩

ಲಲಿತ ಹೇಷಾ ಧ್ವನಿಯ ಹಯ ಮಂ
ಡಲದ ಮೌಳಿಯ ಮೇಲು ದಾಯದ
ಲುಳಿಯ ಚೀತ್ಕೃತಿ ರವದ ಪಲಪಲ ತೆರದ ಫಳಹರೆದ
ಚಲತುರಗ ಖುರ ಹತಿಯ ರಭಸೋ
ಚ್ಚಲಿತ ಧೂಳೀ ಧೂಸರದ ರಥ
ದೊಳಗೆ ನಿಂದಾ ಶಕ್ರಸಾರಥಿ ನುಡಿಸಿದನು ನರನ ೧೪

ಏಳು ಫಲುಗುಣ ವರೂಥದ
ಮೇಲೆ ಬಿಜಯಂಗೈವ ಬಹಳ ಫ
ಲಾಳಿಯಿಂದೆಲಾ ನಿನ್ನ ಪುಣ್ಯದ್ರುಮದ ಬೇರೊಡೆದು
ಸಾಲಕುರಿದರಿಹಿಗಳ ಕರ್ಮದ
ಕೂಲಿಗರ ಜಡ ಜಂಝ ಪೂಗರ
ಜಾಲ ಸಿರಿಯನಿಮಿಷರ ಪುರಿ ವಶವಾಯ್ತು ನಿನಗೆಂದ ೧೫

ಬಲ್ಲರಾರದನಶ್ವಮೇಧದ
ಮಲ್ಲರನು ಕೃತ ರಾಜಸೂಯರು
ಬಲ್ಲರೇ ಕಡೆಬೀಡ ಕೋಟೆಯ ಗುಡಿಯ ಬೊಡ್ಡಿಯರ
ಎಲ್ಲಿಯಮರಾವತಿ ನರಾಧಮ
ರೆಲ್ಲಿ ನಾವೀಶ್ವರನ ಕರುಣದ
ಭುಲ್ಲವಣೆಯಲಿ ಭಾಗ್ಯನೆಂದನು ನಗುತ ಕಲಿಪಾರ್ಥ ೧೬

ಎನುತ ತೇರಿನೊಳೊಂದು ಕಾಲಿ
ಟ್ಟನು ಧನಂಜಯನಿಂದ್ರಕೀಲದ
ವನಕೆ ಕೈಮುಗಿದೆರಗಿದನು ಮಧುರ ವಚನದಲಿ
ಮುನಿಜನವೆ ಪರ್ವತವೆ ಪಂಕಜ
ವನವೆ ತರುಲತೆ ಗುಲ್ಮ ಖಗ ಮೃಗ
ವನಚರವೆ ನಾ ಹೋಗಿಬಹೆನೇ ನಿಮ್ಮನುಜ್ಞೆಯಲಿ ೧೭

ಎಂದು ರಥವೇರಿದನು ಪಾರ್ಥ ಪು
ರಂದರನ ಸಾರಥಿ ಗುಣೌಘವ
ನೊಂದು ನಾಲಗೆಯಿಂದ ಹೊಗಳಿದನಾ ಧನಂಜಯನ
ಗೊಂದಣದ ವಾಘೆಗಳನೆಲ್ಲವ
ನೊಂದುಗೂಡಿ ಕಿರೀಟಿ ದೃಢವಾ
ಗೆಂದು ಮಾತಲಿ ಚಪ್ಪರಿಸಿದನು ಚಪಲ ವಾಜಿಗಳ ೧೮

ಆವ ಜವವೇನೆಂಬ ಗತಿ ಮೇ
ಣಾವ ದೃಢ ವೇಗಾಯ್ಲತನ ತಾ
ನಾವ ಸೂಟಿಯದಾರು ಬಲ್ಲರು ವಹಿಲ ವಿವರಣವ
ತೀವಿತಾಕಾಶವನು ಹೇಷಾ
ರಾವ ಸೂತನ ಹುಂಕೃತಿ ಧ್ವನಿ
ಯಿೂ ವಿಗಡ ರಥಚಕ್ರಚೀತ್ಕೃತಿ ಚಪಲ ನಿರ್ಘೋಷ ೧೯

ತೇರು ಮೇಲಕ್ಕಡರೆ ನುಡಿದನು
ಸಾರಥಿಗೆ ಕಲಿ ಪಾರ್ಥ ವಿವರಿಸು
ಧಾರುಣಿಯ ಪರ್ವತ ಸಮುದ್ರ ದ್ವೀಪ ನದನದಿಯ
ತೋರುವೀ ಲೋಕಂಗಳಳತೆಯ
ಸೂರಿಯನ ರಥಗತಿಯನೆಸೆವಾ
ಮೇರುವನು ಪಸರಿಸಿದ ಗಿರಿಗಳ ತಿಳಿಯ ಹೇಳೆಂದ ೨೦

ಧರೆಯನಾಂತವರಾರು ಧಾರುಣಿ
ಯಿರವದೇತರ ಮೇಲೆ ದಿಗ್ದೇ
ವರ ಪುರಂಗಳವೆಲ್ಲಿಹವು ಬೊಮ್ಮಾಂಡವೆನಿತಗಲ
ಉರುತರ ಗ್ರಹರಾಶಿಯಾ ಧ್ರುವ
ನಿರವು ಮೇಲೆನಿತೆನಿತು ಯೋಜನ
ವರುಹೆನಲು ಪಾರ್ಥಂಗೆ ಮಾತಲಿ ನಗುತ ವಿವರಿಸಿದ ೨೧

ಕೇಳು ನೀನೆಲೆ ಪಾರ್ಥ ತಾರಾ
ಮಾಲೆಗಳ ವಿವರವನು ರವಿರಥ
ಕಾಲಚಕ್ರವನೈದಿ ಗಗನಾಂಗಣದಿ ಚರಿಯಿಪುದ
ಲೀಲೆಯಿಂದಬುಜೋದರನು ಸಲೆ
ಪಾಲಿಸುವ ಲೋಕಗಳನೆಂದವ
ಶೂಲಿಯಂಘ್ರಿಯ ನೆನೆದು ಪೇಳಿದ ಭುವನ ಕೋಶವನು ೨೨

ಕೆಳಗಣಂಡ ಕಟಾಹ ತೊಡಗಿಯೆ
ಜಲವು ತುಂಬಿಹುದದರ ಘಾತವು
ತಿಳಿಯಲಿಪ್ಪತ್ತೈದು ಕೋಟಿಯ ಪವಣ ಪಡೆದಿಹುದು
ಇಳೆಯುದರ ಮೇಲೊಂದು ಕೋಟಿಯ
ದಳದಲಿಹುದಲ್ಲಿಂದ ಮೇಲಣ
ದಳತೆಯದು ಚವ್ವೀಸ ಕೋಟಿಯಜಾಂಡ ಪರಿಯಂತ ೨೩

ಹತ್ತಿರೆಯಲಿಹುದತಳವಲ್ಲಿಂ
ದತ್ತ ವಿತಳ ಸುತಳ ತಳಾತಳ
ದೊತ್ತಿನ ಮಹಾತಳ ರಸಾತಳ ಕೆಳಗೆ ಪಾತಾಳ
ಬಿತ್ತರದ ಲೋಕಂಗಳೇಳು ಧ
ರಿತ್ರಿಯೊಳಗೊಂದೊಂದರಂತರ
ಹತ್ತು ಹತ್ತು ಸಹಸ್ರಯೋಜನ ಪಾರ್ಥ ಕೇಳೆಂದ ೨೪

ಉತ್ತಮವು ಭೂಲೋಕವಲ್ಲಿ:
ದತ್ತ ಭುವ ಸುವ ಲೋಕವಲ್ಲಿಂ
ದತ್ತ ಮಹಜನ ಲೋಕವಲ್ಲಿಂದತ್ತ ತಪಲೋಕ
ಉತ್ತಮೋತ್ತಮವಿವಕೆ ಮೇಲಣ
ಸತ್ಯಲೋಕಾದಿಗಳ ನೋಡಿ ಧ
ರಿತ್ರಿಯಲಿ ಬಲುಗಾಹಕೊಟ್ಟನು ಲೋಕಪಾಲಕರ ೨೫

ತರವಿಡಿದ ಮೇಲಣ ಜಗಂಗಳು
ತರಣಿ ಮಂಡಲ ತೊಡಗಿಯತಿ ವಿ
ಸ್ತರವೆನಿಸಿ ಬೊಮ್ಮಾಂಡ ಪರಿಯಂತಡಕಿಲಾಗಿಹವು
ಮರುತನಾಧಾರದಲಿ ಲಕ್ಷ್ಮೀ
ಕರವೆನಿಸಿ ದೇವರುಗಳಿಂದವೆ
ಭರಿತವಾಗಿಹವವರ ಮಹಿಮೆಯ ಹೇಳಲರಿದೆಂದ ೨೬

ಧಾರುಣಿಯನಹ ತಾಳ್ದನಾತನ
ವೀರ ಕಮಠನು ಹೊತ್ತನನಿತರ
ಭಾರವನು ನಿಜಶಕ್ತಿ ಧರಿಸಿಹಳೊಂದು ಲೀಲೆಯಲಿ
ತೋರ ಗಿರಿಗಳವೆರಸಿದಿಳೆ ತಾ
ನೀರೊಳದ್ದುವದೆಂದು ಸಲೆ ಮದ
ವಾರಣಂಗಳು ಧರಿಸಿಕೊಂಡಿಹವೆಂಟು ದಿಕ್ಕಿನಲಿ ೨೭

ಧರಣಿ ತಾನೈವತ್ತು ಕೋಟಿಯು
ಹರಹು ಸಪ್ತ ಸಮುದ್ರ ಹೊರಗಾ
ವರಿಸಿ ಜಂಬೂ ದ್ವೀಪ ನಡುವಿಹುದಲ್ಲಿ ಭದ್ರಾಶ್ವ
ವರುಷ ಭಾರತ ಕೇತುಮಾಲವು
ಕುರುವರುಷವಿವು ಪತ್ರವಾ ಸುರ
ಗಿರಿಯ ಹೊರಗಾಗಿಹವು ಕರ್ಣಿಕೆಯಂತೆ ಕನಕಾದ್ರಿ ೨೮

ಲಕ್ಕದೊಳು ಹದಿನಾರು ಸಾವಿರ
ಮಿಕ್ಕ ವಸುಧೆಯೊಳಾಳುಗೊಂಡುದು
ಮಿಕ್ಕ ಚೌರಾಶೀತಿ ಸಾಸಿರ ಯೋಜನದ ನಿಲವು
ಲೆಕ್ಕಿಸಲು ಗಿರಿಶಿಖರದಗಲವ
ದಕ್ಕು ಮೂವತ್ತೆರಡು ಸಾವಿರ
ದಿಕ್ಕಿನೊಡೆಯರಿಗೆಂಟು ಪಟ್ಟಣವದರ ಮೇಲಿಹವು ೨೯

ನಡುವೆ ಚತುರಾನನನ ಪಟ್ಟಣ
ದೆಡೆದೆರವು ಹದಿನಾರು ಸಾವಿರ
ಕಡು ಚೆಲುವಿನಿಂದೆಸೆವ ಮಿಸುನಿಯ ಕೋಟೆ ನವರತ್ನ
ಎಡೆಗೆಡೆಗೆ ಕೇವಣಿಸಿದಂಗಡಿ
ಗಡಣೆಯಿಲ್ಲದ ಹರ್ಮ್ಯನಿಚಯಕೆ
ಪಡಿ ಚತುರ್ದಶ ಭುವನದೊಳಗಿಲ್ಲೆನಿಸಿ ಮೆರೆದಿಹುದು ೩೦

ಹರಳುಗಳ ಕೇವಣದ ಮಂಗಳ
ತರವೆನಿಪ ತೊಡಿಗೆಗಳ ದಿವ್ಯಾಂ
ಬರದಿ ಬೆಳಗುವ ತನುಲತೆಯ ನವಮಣಿಯ ಮೌಳಿಗಳ
ತರಳ ಲೋಚನದಿಂದುವದನದ
ಪರಮ ಸೌಭಾಗ್ಯದ ವಿಲಾಸದ
ಪರಿಜನಂಗಳು ಕಮಲಭವ ಪುರದಲ್ಲಿ ನೆಲಸಿಹರು ೩೧

ಹಲವುನೆಲೆ ಚೆಲುವಿಕೆಗೆ ಸಲೆ ಹೊಂ
ಗಲಶ ಲೋಕಕೆ ವಿಲಸ ಹೇಮದ
ಕೆಲಸ ಗತಿಯಲಿ ಚೆಲುವೆನಿಸಿದುಪ್ಪರಿಗೆ ನೋಳ್ಪರಿಗೆ
ಹೊಳಹಿನಲಿ ಥಳಥಳಿಸುತಿಹುದದು
ನಳಿನಪೀಠನ ಭವನ ನಭದಿಂ
ದಿಳಿವ ಗಂಗೆಯ ಧಾರೆ ಮೆರೆದುದು ಪುರದ ಬಾಹೆಯಲಿ ೩೨

ಮೇರೆಯಿಲ್ಲದ ದೇವ ತತಿಗಳ
ಭಾರದಿಂ ಜಗ ಜರಿವುದೆಂದಾ
ಮೇರುವಿಂಗಾನಿಸಿದ ರಜತ ಸ್ತಂಭವೋ ಮೇಣು
ಸಾರತರ ಸುಕೃತವನು ಸಂಚಿಸಿ
ಧೀರರೈದುವ ಸತ್ಯಲೋಕದ
ದಾರಿಯೆಂಬಂದದಲಿ ಗಂಗೆಯ ಧಾರೆ ಮೆರೆದಿಹುದು ೩೩

ನರ ಸುರರು ಮೊದಲಾದ ಸಚರಾ
ಚರದ ಜೀವರಘಂಗಳನು ಸಂ
ಹರಿಸಲೋಸುಗ ಸತ್ಯಲೋಕದಿನಿಳಿದು ಬಹ ಗಂಗೆ
ಧರೆ ಧರಿಸಲರಿದೆಂದು ಕನಕದ
ಗಿರಿಯ ಶಿಖರದ ನಡುವೆ ಬರುತಿಪ
ಪರಮ ಪಾವನೆ ತಿರುಗಿ ಹರಿದಳು ನಾಲ್ಕು ಮುಖವಾಗಿ ೩೪

ಅಳಕನಂದೆ ಸುಚಕ್ಷು ನಿರ್ಮಲ
ಜಲದ ಭದ್ರೆಯು ಸತ್ಯೆಯೆಂಬಿವು
ತಿಳಿಯೆ ದಕ್ಷಿಣವಾದಿಯಾಗಿ ಪ್ರದಕ್ಷಿಣಾರ್ಥದಲಿ
ಸುಳಿದು ಮೇರುವಿನಿಂದ ಕುಲಗಿರಿ
ಗಿಳಿದು ಜಾಹ್ನವಿ ನಾಲ್ಕು ದಿಕ್ಕಿನ
ಜಲನಿಧಿಯ ಬೆರೆಸಿದಳು ಕೇಳ್ ಜಗದಘವನಪಹರಿಸಿ ೩೫

ಸುರಗಿರಿಯ ಮೊದಲಲ್ಲಿ ಕೀಲಕ
ಗಿರಿಯು ನಾಲ್ಕವರಲ್ಲಿ ಕೇಸರ
ಸರಸಿ ನಾಲ್ಕರುಣೋದೆ ಭದ್ರೆ ಸಿತೋದೆ ಮಾನಸದ
ಹೊರಗೆ ನಾಲ್ಕುದ್ಯಾನ ಕೀಲಕ
ಗಿರಿಯುದಯವೈವತ್ತು ಯೋಜನ
ಹರಹು ತಾನು ಸಹಸ್ರ ಯೋಜನವದರ ಶಿಖರದಲಿ ೩೬

ಸುರಪತಿಯ ದಿಕ್ಕಿನಲಿ ಬೆಳೆದಿಹು
ದರಳಿ ಜಂಬೂವೃಕ್ಷ ತೆಂಕಲು
ಹಿರಿದೆನಿಪ ತನಿವಣ್ಣ ರಸ ನದಿಯಾಗಿ ಹರಿದಿಹುದು
ವರುಣನಿಹ ದೆಸೆಯಲಿ ಕದಂಬವು
ಹರಸಖನ ದಿಕ್ಕಿನಲಿ ವಟಕುಜ
ಸುರರಿಗಾಶ್ರಯವೆನಿಸಿ ಕೀಲಕ ಗಿರಿಯ ಮೇಲಿಹುದು ೩೭

ಮಂದರಾಚಲ ಮೂಡ ತೆಂಕಲು
ಗಂಧಮಾದನ ವಿಮಳ ಪಶ್ಚಿಮ
ದಿಂದ ಬಡಗ ಸುಪಾರ್ಶ್ವವೆಂಬಿವು ಕೀಲಕಾದ್ರಿಗಳು
ನಂದನವು ಬಡಗಣದು ಪಡುವಣ
ಚಂದವಹ ವೈಭ್ರಾಜ ತೆಂಕಲು
ಗಂಧಮಾದನ ಚೈತ್ರರಥ ಮೂಡಣದು ಕೇಳೆಂದ ೩೮

ಸೀತಳಾಂತಕ ಕುಂಡ ಮಳಯ ಕು
ರ್ಧಾತಿ ವೈರಂತಕವು ಮೂಡಲು
ನೀತಿವಿದನೆ ತ್ರಿಕೂಟ ಶಿಶಿರಪತಂಗರುಚಿ ನಿಷಧ
ಖ್ಯಾತವಿವು ತೆಂಕಣದು ಕಪಿಲನ
ಜಾತಿ ವಾರಿಧಿ ಗಂಧಮಾದನ
ತಾತವಿವು ಸುಖವಾಸ ಮಿಗೆ ವೈಡೂರ್ಯ ಪಶ್ಚಿಮದಿ ೩೯

ನಾಗ ಕಾಲಾಂಜನವು ಹಂಸನು
ಮೇಗೆ ವೃಷಭನು ಶಂಖ ಕೂಟವ
ನೀಗಳೀಕ್ಷಿಸು ಬಡಗ ಲೆಕ್ಕಕೆ ನಾಲ್ಕುವನು ಬಳಿಕ
ಮೇಗೆ ಕೇಳೀರೈದು ದೆಸೆಗಳ
ಲಾ ಗಿರಿಯ ಹೊರಗಿಹರು ಸುರಜನ
ಯೋಗಿಸಿದ್ಧ ನಿಷೇವಿತರು ತಾವಾಗಿ ವಿಭವದಲಿ ೪೦

ಧಾರುಣಿಯ ನಡುವಳಸಿ ಬೆಳೆದಿಹ
ಮೇರು ಗಿರಿಯನು ಬಳಸಿ ವೃತ್ತಾ
ಕಾರವಾಗೆಸೆದಿಹುದು ಜಂಬೂದ್ವೀಪ ನವಖಂಡ
ಮೇರೆಯಾಗಿಹ ಗಿರಿಕುಲಂಗಳ
ತೋರದಗಲವನುನ್ನತಂಗಳ
ಸಾರಹೃದಯನೆ ನಿನಗೆ ಕಲಿಮಲದೂರ ತಿಳುಹುವೆನು ೪೧

ಕುರು ಹಿರಣ್ಮಯ ರಮ್ಯಕವು ಸುರ
ಗಿರಿಯನೊಳಕೊಂಡಿಪ್ಪಿಳಾವೃತ
ಹರಿವರುಷ ಕಿಂಪುರುಷ ಭಾರತವುತ್ತರಾದಿಗಳು
ಪಿರಿಯ ಶೃಂಗಶ್ವೇತ ನೀಲದ
ಗಿರಿ ನಿಷಧವಾ ಹೇಮ ಕೂಟದ
ಗಿರಿ ಹಿಮಾಲಯವಾಗಪರಜಲಧಿಯನು ಮುಟ್ಟಿಹವು ೪೨

ಸುರಗಿರಿಯ ಬಳಸಿಪ್ಪಿಳಾವೃತ
ವರುಷದಿಂದವೆ ಮೂಡಲೊಪ್ಪುವ
ಪಿರಿಯ ಗಿರಿ ಮಾಲ್ಯವತ ಜಲ ನಿಧಿ ತನಕ ಭದ್ರಾಶ್ವ
ವರುಷ ಪಡುವಣ ಗಂಧಮಾದನ
ಗಿರಿ ತೊಡಗಿಯಾ ಪಶ್ಚಿಮಾಶಾ
ಶರಧಿ ಪರಿಯಂತಿಪ್ಪ ವರುಷವು ಕೇತುಮಾಲವದು ೪೩

ವರುಷ ಮಧ್ಯದ ಪರ್ವತಂಗಳ
ಹರಹು ತಾನೆರಡೆರಡು ಸಾವಿರ
ವರುಷ ನವನವ ನವಸಹಸ್ರವದಾರು ಮಧ್ಯದಲಿ
ವರುಷವದು ಮೂವತ್ತ ನಾಲ್ಕರ
ಪರಿಗಣಿತ ಮೂಡಣದು ಪಡುವಣ
ದೆರಡು ತಾನದರಂತೆ ಮೆರೆವುದು ಹೊರಗೆ ಲವಣಾಬ್ಧಿ ೪೪

ದೇವ ಕೂಟದ ಜಠರವೆಂಬಿವು
ಭಾವಿಸಲು ಮಾಲ್ಯವತದಿಕ್ಕೆಲ
ನಾ ವಿಧದಿ ಕೈಲಾಸ ಪರ್ವತ ಗಂಧಮಾದನವು
ಕೋವಿದನೆ ಕೇಳ್ ಭೂಮಿ ವಲಯದೊ
ಳಾ ವಿಶಾಲದ ಪಾರಿಯಾತ್ರದ
ದೇವಯೋಗ್ಯದ ಗಿರಿಗಳಿಕ್ಕೆಲ ನಿಷಧ ಪರ್ವತಕೆ ೪೫

ನೀಲಗಿರಿಯಿಕ್ಕೆಲಕೆ ವಾರಿಧಿ
ಮೇಲೆ ನಿಪ್ಪತಿ ಶೃಂಗವಿವು ವೈ
ನೀಳದಲಿ ಪೂರ್ವಾಪರದ ಜಲನಿಧಿಯು ಮುಟ್ಟಿಹವು
ಹೇಳಿದೆಂಟುಪ ಪರ್ವತಾಗ್ರ ವಿ
ಶಾಲ ತಾನೆಂಬತ್ತು ಯೋಜನ .
ಕೇಳಿಳಾವೃತ ವೇಲೆಯಾಗಿಹ ಗಿರಿಯ ಲೆಕ್ಕವನು ೪೬

ವರುಷದೊಡೆಯನಿಳಾವೃತಕೆ ಸಂ
ಕರುಷಣನು ಭದ್ರಾಶ್ವದೊಳು ಹಯ
ಶಿರನು ಹರಿವರುಷಕ್ಕೆ ನರಹರಿ ಕೇತುಮಾಲದಲಿ
ಸಿರಿಯರಸ ರಮ್ಯಕಕೆ ಮತ್ಸ್ಯನು
ಪಿರಿಯ ಕಮಠ ಹಿರಣ್ಮಯಕೆ ಕುರು
ವರುಷದಲ್ಲಿ ಮಹಾ ವರಾಹನು ಪಾರ್ಥ ಕೇಳೆಂದ ೪೭

ರಾಮ ಕಿಂಪುರುಷಕ್ಕೆ ಭಾರತ
ಭೂಮಿ ನರ ನಾರಾಯಣನು ತಿಳಿ
ನಾಮಧಾರಕ ಹನುಮ ವಸುಧಾದೇವಿ ನಾರದನು
ಆ ಮನು ಜಗಚ್ಚಕ್ಷು ಲಕ್ಷ್ಮೀ
ಪ್ರೇಮದಿಂ ಪ್ರಹ್ಲಾದ ನಿಜ ನಿ
ಸ್ಸೀಮ ಭದ್ರಶ್ರವ ಸದಾಶಿವನಿವರು ಪಾಲಕರು ೪೮

ವರುಷವನು ಗಿರಿಗಳನು ಬಳಸಿಹ
ಪಿರಿಯ ಲವಣ ಸಮುದ್ರ ತದನಂ
ತರದಿ ದೀಪಪ್ಲಕ್ಷಯಿಕ್ಷು ಸಮುದ್ರವಲ್ಲಿಂದ
ಇರಲು ಶಾಲ್ಮಲವದರ ಹೊರಗಣ
ಸುರೆಯ ಶರಧಿಯನೊಂದನೊಂದಾ
ವರಿಸಿ ಪರಿಭಾವಿಸಲು ತದ್ವಿಗುಣಂಗಳಾಗಿಹವು ೪೯

ತಿಳಿವೊಡಾ ಸುರೆಯಿಂದ ಕುಶಘೃತ
ಜಲಧಿ ಕ್ರೌಂಚ ದ್ವೀಪವೆಂಬಿವ
ರಳತೆಗಿಮ್ಮಡಿಯಾಗಿ ದಧಿಯ ಸಮುದ್ರವಲ್ಲಿಂದ
ಇಳೆಯ ಮೇಲೆಸೆದಿಪ್ಪ ಶಾಕದ
ಬಳಿಯ ದುಗ್ಧವಿದೊಂದನೊಂದನು
ಬಳಸಿಕೊಂಡಿಹವಬುಜನಾಭನ ನಿಳಯವದ ನೋಡ ೫೦

ಚೆಲುವಿಕೆಯ ನೆಲೆಯೆನಿಸಿ ಮೆರೆವುದು
ಪ್ರಳಯವೆಂದೂಯಿಲ್ಲ ಲಕ್ಷ್ಮೀ
ನಿಳಯನಿಹನನವರತ ಸುಳಿಯವು ಮೃತ್ಯು ಮಾಯೆಗಳು
ಬಳಿಕೆ ಸಲ್ಲದು ಕಲಿಯ ಕಾಲದ
ಹೊಲಬು ಹೊದ್ದದು ಹರಿಯ ರೂಪನು
ತಳೆದ ಪುರವನು ಕ್ಷೀರವಾರಿಧಿ ಬಳಸಿಕೊಂಡಿಹುದು ೫೧

ಯೋಗಿಗಳ ನೆಲೆವೀಡು ಬೊಮ್ಮದ
ಸಾಗರವು ಸನಕಾದಿ ಮುನಿಗಳ
ಭೋಗಭೂಮಿಯನಂತವೆನಿಸಿರ್ದುಪನಿಷತ್ತುಗಳ
ಆಗರವು ಮೂಲೋಕ ದರ್ಪಣ
ವಾಗಿ ದುಗ್ಧೋದಧಿಯೊಳೆಸೆವುದು
ಶ್ರೀಅಧೀಶನ ನಗರ ನೋಡೆಲೆ ಪಾರ್ಥ ನೀನೆಂದ ೫೨

ನಳಿನನಾಭನ ದುಗ್ಧ ಶರಧಿಯು
ಬಳಸಿಕೊಂಡಿಹ ಪುಷ್ಕರದ ಹೊರ
ವಳಯದಲಿ ಮೆರೆದಿಪ್ಪುದಾ ಸ್ವಾದೋದ ವಾರಾಶಿ
ಇಳೆಗೆ ಕೋಟೆಯನಿಕ್ಕಿದಂತಿರೆ
ಬೆಳೆದ ಲೋಕಾಲೋಕ ಪರ್ವತ
ತಿಳಿವಡಲ್ಲಿಂದತ್ತ ತಿಮಿರವಜಾಂಡ ಪರಿಯಂತ ೫೩

ಲಕ್ಕ ಜಂಬೂದ್ವೀಪವಾ ಪರಿ
ಲಕ್ಕ ಲವಣ ಸಮುದ್ರ ನಾಲುಕು
ಲಕ್ಕ ದ್ವೀಪ ಪ್ಲಕ್ಷವಿಕ್ಷು ಸಮುದ್ರವೊಂದಾಗಿ
ಲಕ್ಕವೆಂಟು ಸುಶಾಲ್ಮಲಿಯು ಸುರೆ
ಲಕ್ಕ ಷೋಡಶ ಕುಶ ಘೃತಂಗಳು
ಲಕ್ಕ ಮೂವತ್ತೆರಡು ಕ್ರೌಂಚ ದ್ವೀಪ ದಧಿಗೂಡಿ ೫೪

ಲಕ್ಕ ತಾನರವತ್ತು ನಾಲ್ಕಾ
ಗಿಕ್ಕು ಶಾಕ ಕ್ಷೀರ ಕೋಟಿಯು
ಲಕ್ಕವಿಪ್ಪತ್ತೆಂಟು ಪುಷ್ಕರ ಸುಜಲವೊಂದಾಗಿ
ಮಿಕ್ಕ ಕೋಟಿ ದ್ವಯದ ಮೇಲಣ
ಲಕ್ಕವೈವತ್ತಾರು ಯೋಜನ
ವಕ್ಕು ಹೇಮದ ಭೂಮಿ ಲೋಕಾಲೋಕ ಗಿರಿಸಹಿತ ೫೫

ಹತ್ತು ಲಕ್ಕವು ಹೀನವಾಗಿ
ಪ್ಪತ್ತು ಕೋಟಿ ತಮಂಧದುರ್ವರೆ
ಸುತ್ತುವರೆ ಬೆಳೆದಿಹುದು ಗರ್ಭೋದಕದ ಪರಿಯಂತ
ಇತ್ತ ಸುರಗಿರಿಯಿಂದ ಹಿಂದಿ
ಪ್ಪತ್ತು ಕೋಟಿಯು ಕೂಡಿ ನೋಡೆ ಧ
ರಿತ್ರಿ ತಾನೈವತ್ತು ಕೋಟಿಯ ಲೆಕ್ಕ ನೋಡೆಂದ ೫೬

ವರುಷವೊಂಬತ್ತಾಗಿಹುದು ವಿ
ಸ್ತರದ ಜಂಬೂ ದ್ವೀಪವೊಂದೇ
ವರುಷವೇಳಾಗಿಹವು ತಾ ಶತಸಂಖ್ಯೆಯಾ ದ್ವೀಪ
ನಿರುತ ಕಡೆಯ ದ್ವೀಪವೆಂಬುದು
ವರುಷವೆರಡಾಗಿರಲು ಮಾನಸ
ಗಿರಿಯದರ ಮೇಲಿಹುದು ಚಕ್ರದ ಕಂಬಿಯಂದದಲಿ ೫೭

ವರುಷವೆರಡಾಗೊಪ್ಪುತಿಹ ಪು
ಷ್ಕರದ ನಡುವಣ ಮಾನಸೋತ್ತರ
ಗಿರಿಯುದಯವೈವತ್ತು ಸಾವಿರ ಹರಹು ತದ್ದ್ವಿಗುಣ
ಪಿರಿದು ಪುಣ್ಯಶ್ಲೋಕ ಕೇಳಾ
ಗಿರಿಯ ಶಿಖರದ ಮೇಲೆ ದಿಗ್ದೇ
ವರ ಪುರಂಗಳು ಸಿರಿಗೆ ನೆಲೆವನೆಯೆನಿಸಿ ಮೆರೆದಿಹವು ೫೮

ಸುರಪನದುವೇ ಸ್ವರ್ಗ ಸಾರವು
ನಿರುತದಲಿ ಸಂಯಮನಿಯೆಂಬಾ
ಪುರವು ಕಾಲನ ನಗರಿ ತೆಂಕಲು ಪಶ್ಚಿಮಾದ್ರಿಯಲಿ
ವರುಣನದು ಶುದ್ಧಿಮತಿ ಯಕ್ಷೇ
ಶ್ವರಗೆ ಸೇವಾಕಾಂತಿ ಮತಿ ಶಿಖಿ
ನಿರುತಿ ಮರುದೀಶಾನ್ಯರಿಗೆಯುವರವರ ನಾಮದಲಿ ೫೯

ಉರಗ ನಾಳಾಂಬುಜ ಕುಸುಮವೀ
ಧರಣಿ ಕರ್ಣಿಕೆ ಮೇರುಗಿರಿ ಕೇ
ಸರ ನಗಂಗಳು ಬಳಸಿ ಕೇಸರದಂತೆ ಸೊಗಯಿಪವು
ಸರಸಿರುಹ ಸಂಭವನು ಮಧ್ಯದೊ
ಳಿರಲು ಭೂತಲವೈದೆ ಮೆರೆವುದು
ಸಿರಿ ಮಹಾವಿಷ್ಣುವಿನ ನಾಭೀಕಮಲದಂದದಲಿ ೬೦

ಧರೆಯ ವರುಷ ದ್ವೀಪ ಗಿರಿಗಳ
ಶರಧಿಗಳ ಸುರ ಶೈಲದಗ್ರದ
ಹರನ ಚತುರಾನನನ ಪಟ್ಟಣದಿರವ ತಿಳುಹಿದೆನು
ಸರಸಿರುಹ ಬಂಧುವಿನ ರಥವಿಹ
ಪರಿಯ ಚರಿಸುವ ಪಥವ ತಾರೆಗ
ಳಿರವ ನೀ ಕೇಳೆಂದು ಮಾತಲಿ ನುಡಿದನರ್ಜುನಗೆ ೬೧

ಗಾಲಿ ಮಾನಸ ಗಿರಿಯ ಶಿಖರದ
ಮೇಲೆ ತಿರುಗುವುದೊಂದು ಕಡೆ ಸುರ
ಶೈಲದಲಿ ಬಿಗಿದಚ್ಚು ಕೋಟಿಯ ಮೇಲೆಯೈವತ್ತು
ಏಳು ಲಕ್ಕದ ನೀಳ ರಥದ ವಿ
ಶಾಲವದು ಮುಪ್ಪತ್ತು ಸಾವಿರ
ಮೇಲೆ ಧ್ರುವ ಮಂಡಲಕೆ ಬಿಗಿದಿಹುದನಿಲ ಪಾಶದಲಿ ೬೨

ಹರಿಯ ಗಾಲಿಯ ನಾಭಿ ಮೂರ
ಚ್ಚರಿಯ ಚಾತುರ್ಮಾಸಗಳು ಘನ
ತರದ ಷಡುಋತು ಬಳೆ ಷಡಂಗವೆ ನೇಮಿ ಚತುರಯುಗ
ತರವಿಡಿದ ಸಂವತ್ಸರವು ಘನ
ತರದ ಸರಿವತ್ಸರವಿದಾ ವ
ತ್ಸರವು ಐದ್ವತ್ಸರವು ವತ್ಸರವೆನಿಪ ಮೊಳೆಯಾಯ್ತು ೬೩

ಉರಗ ನಾಳದ ಹೊರಜೆ ನವ ಸಾ
ವಿರದ ಕುರಿಗುಣಿಯಿಸುಗಳು ತಾ
ವೆರಡು ಮಡಿ ತೊಂಬತ್ತುವೊಂದು ಸಹಸ್ರದರ್ಧವದು
ಪರಿಯ ನೊಗನದರನಿತು ಸಂಖ್ಯೆಗೆ
ಸರಿಯೆನಿಪ ಮೇಲಚ್ಚು ಮಂಗಳ
ತರವೆನಿಪ ನವರತ್ನ ರಚನೆಯ ಚಿತ್ರರಥವೆಂದ ೬೪

ಕರಸಹಸ್ರನ ರಥಕೆ ಹೂಡಿದ
ತುರಗ ಛಂದೋಮಯವು ಸಾರಥಿ
ಯರುಣ ಕಾಲವೆ ಗಾಲಿ ನವಕೋಟಿಯನು ಚರಿಯಿಸುಗು
ವರ ವರೂಥದ ಮಧ್ಯದಲಿ ವಿ
ಸ್ತರದ ಮಣಿಪೀತದಲಿ ಮಿಗೆ ದಿನ
ಕರನು ಗ್ರಹಭವನಕ್ಕೆ ಸಲೆಯಾಧಾರವಾಗಿಹನು ೬೫

ಹರಿ ತರಣಿಗಿಂದುವಿಗೆ ಕರ್ಕಟ
ಧರಣಿಜಂಗಜ ವೃಶ್ಚಿಕವು ಹಿಮ
ಕರನ ತನಯಗೆ ಮಿಥುನ ಕನ್ಯೆ ಬೃಹಸ್ಪತಿಗೆ ಚಾಪ
ಪಿರಿಯ ಝಷತುಲೆ ವೃಷಭದಾನವ
ಗುರುವಿನವು ಮೃಗಕುಂಭ ಮಂದಂ
ಗಿರವು ನಿಜಗೃಹ ರಾಹುಕೇತುಗಳವರ ಕೂಡಿಹರು ೬೬

ಲಕ್ಕ ಉರ್ವಿಗೆ ರವಿಯು ಪಥ ಶಶಿ
ಲಕ್ಕವೆರಡು ತ್ರಿಲಕ್ಕ ಯೋಜನ
ಲೆಕ್ಕಿಸಲು ನಕ್ಷತ್ರ ಬುಧನಿಹನೈದು ಲಕ್ಕದಲಿ
ಲಕ್ಕವೇಳಾ ಶುಕ್ರಕುಜ ನವ
ಲಕ್ಕ ಗುರು ಹನ್ನೊಂದು ಲಕ್ಕವು
ಮಿಕ್ಕ ವಸುಧಾತಳಕೆ ಶನಿ ಹದಿಮೂರುವರೆ ಲಕ್ಕ ೬೭

ವಿದಿತವಿಂತಿದು ಸಪ್ತಋಷಿಗಳ
ಸದನವದು ಹದಿನಾಲ್ಕು ಲಕ್ಕವು
ಮುದದಿ ನೆಲಸಿಹ ಧ್ರುವನು ತಾ ಹದಿನೈದು ಲಕ್ಷದಲಿ
ಅದರ ಮೇಲಿಹ ವಿಷ್ಣುಪದದಲಿ
ಸದಮಳಾತ್ಮಕ ಶಿಂಶುಮಾರನು
ಪದುಳದಲಿ ಸಕಲಕ್ಕೆ ಸಲೆಯಾಧಾರವಾಗಿಹನು ೬೮

ವರ ಕುಮಾರಕ ನೀನು ಕೇಳೈ
ಪಿರಿಯ ಲೋಕಾಲೋಕವೆಂಬಾ
ಗಿರಿಯ ಬಳಸಿದ ಕಾಳಗತ್ತಲೆಯೊಳಗೆ ಮೆರೆದಿಪ್ಪ
ಧರೆಯೊಳರುಣ ದ್ವೀಪವದರೊಳು
ನೆರೆದ ಮಂದೇಹರುಗಳೆಂದ
ಚ್ಚರಿಯದಲಿ ಸರಸಿರುಹದಾಸನನಿಂದ ಜನಿಸಿದರು ೬೯

ಹರಿಹರ ವಿರಿಂಚಿಗಳು ಮೊದಲಾ
ದುರುವ ದೇವರುಗಳೊಳು ಮತ್ತಾ
ತರವಿಡಿದ ಹದಿನಾಲ್ಕು ಜಗದೊಳಗುಳ್ಳ ದೇವರಲಿ
ತರಣಿಯುತಿ ಬಲವಂತನೆಂಬುದ
ನರಿದು ಮಂದೇಹಾಸುರರು ಸಾ
ಸಿರ ಕರದ ದಿನನಾಥನೊಳು ಕಾಳಗವ ಬಯಸಿಹರು ೭೦

ಪರಿಕಿಸಲು ಪರಮಾತ್ಮ ದಿನಕರ
ಹರಿಹರ ವಿರಿಂಚಿಗಳು ಸೂರ್ಯನ
ನೆರೆದು ಸುತಿ ಕೈವಾರಿಸುತ್ತಿರೆ ಘನಮಹಾಮಹಿಮ
ಕಿರಣದುರಿಯ ಮಹಾ ಪ್ರತಾಪನು
ತರಣಿಯೆಂದಾತನೊಳು ಕಾದಲು
ಸರಸಿರುಹಸಂಭವನ ಮೆಚ್ಚಿಸಿ ವರವ ಪಡೆದಿಹರು ೭೧

ಕಾಲವೆಂಬುದು ರವಿಯು ಗಾಲಿಯ
ಕಾಲ ಗತಿಯ್ಯೆ ಸಲೆ ಕೃತಾಂತಗೆ
ಲೀಲೆ ಸೃಷ್ಟಿಗೆ ಲಯವು ಸಚರಾಚರಗಳೆಂಬಿವನು
ಕಾಲ ಚಕ್ರದ ಖಚರ ಗತಿಯಲಿ
ಕಾಳಗತ್ತಲೆಯನು ನಿವಾರಿಸಿ
ಪಾಲಿಸುವ ಲೋಕಂಗಳಿನಿತುವ ಪಾರ್ಥ ನೋಡೆಂದ ೭೨

ಅವನಿಪತಿ ಕೇಳಿಂದ್ರ ಸಾರಥಿ
ವಿವರಿಸಿದನರ್ಜುನಗೆ ಭೂಮಿಯು
ಭುವನ ಕೋಶದ ಸನ್ನಿವೇಶವನದ್ರಿ ಜಲಧಿಗಳ
ಇವು ಕುಲಾದ್ರಿಗಳಿವು ಪಯೋಧಿಗ
ಳಿವು ಮಹಾ ದ್ವೀಪಂಗಳಿವು ಮಾ
ನವರ ಧರಣೀ ಸ್ವರ್ಗ ಮೇಲಿನ್ನಿತ್ತ ನೋಡೆಂದ ೭೩

ಈ ವಿಮಾನದ ಸಾಲ ಸಂದಣಿ
ತೀವಿಕೊಂಡಿದೆ ಗಗನ ತಳದಲಿ
ದೇವಕನ್ಯಾ ಶತಸಹಸ್ರದ ಖೇಳಮೇಳದಲಿ
ಭೂವಳಯದಲಿ ಸುಕೃತಿಗಳು ನಾ
ನಾ ವಿಧದ ಜಪ ಯಜ್ಞ ದಾನ ತ
ಪೋ ವಿಧಾನದಲೊದಗಿದವರನು ಪಾರ್ಥ ನೋಡೆಂದ ೭೪

ಭೂತ ದಯೆಯಲಿ ನಡೆವನೀ ತೋ
ರ್ಪಾತ ನಿರ್ಮಳ ಸತ್ಯ ಭಾಷಿತ
ನೀತ ತೀರ್ಥವಿಹಾರಿ ಸಜ್ಜನನೀತ ಗುಣಿಯಿತ
ಈತ ನಿರ್ಮತ್ಸರನಸೂಯಾ
ತೀತನಿವನತಿ ವಿಪ್ರ ಪೂಜಕ
ನೀತ ಮಾತಾಪಿತರ ಭಕ್ತನು ಪಾರ್ಥ ನೋಡೆಂದ ೭೫

ಈತನಿಂದ್ರಿಯ ವಿಜಯಿ ಸತ್ಕೃತ
ನೀತನಿವ ವೇದಾಧ್ಯಯನ ಪರ
ನೀತ ಪರಹಿತನಿವ ಯಥಾಲಾಭೈಕ ಸಂತೋಷಿ
ಈತ ಶುಚಿ ರುಜುವೀತ ನಿಸ್ಪೃಹ
ನೀತ ನಿರ್ಭಯನೀತ ನಿರ್ಮಳ
ನೀತ ರಾಗದ್ವೇಷರಹಿತನು ಪಾರ್ಥ ನೋಡೆಂದ ೭೬

ಇತ್ತ ನೋಡೈ ಸ್ವಾಮಿ ಕಾರ್ಯಕೆ
ತೆತ್ತನೊಡಲನು ವರ ರಣಾಗ್ರದೊ
ಳಿತ್ತಲೈದನೆ ಭೂಮಿ ಕನ್ಯಾ ಗೋಧನಾವಳಿಯ
ಇತ್ತವನು ಸತ್ಪುತ್ರನನು ತಾ
ಹೆತ್ತವನು ಗೋ ವಿಪ್ರ ಬಾಧೆಗೆ
ಸತ್ತವನನೆಲೆ ಪಾರ್ಥ ನೋಡುತ್ತಮ ವಿಮಾನದಲಿ ೭೭

ಮೇಲೆ ಮೇಲೈದರೆ ಸುತಾರಾ
ಮಾಲೆಗಳವೊಲು ರಾಜಸೂಯದ
ಮೇಲು ಯಜ್ಞದ ವಾಜಿಮೇಧದ ಭೂರಿ ಸುಕೃತಿಗಳು
ಕಾಳಗದೊಳರಿ ಸುಭಟ ಸಿತಕರ
ವಾಲ ಧಾರಾತೀರ್ಥಸೇವಿ ನೃ
ಪಾಲರೈದರೆ ದೀಪ್ಯಮಾನ ವಿಮಾನ ಮಧ್ಯದಲಿ ೭೮

ಈತ ಭರತನು ದೂರದಲಿ ತೋ
ರ್ಪಾತನು ಹರಿಶ್ಚಂದ್ರ ನಳ ನೃಗ
ರೀತಗಳು ಪುರು ಕುತ್ಸನೀತ ಮರುತ್ತ ನೃಪನೀತ
ಈತ ಹೈಹಯ ದುಂದುಮಾರಕ
ನೀತ ನಹುಷ ದಿಳೀಪ ದಶರಥ
ನೀತ ರಘು ತಾನೀತ ಶಂತನು ಪಾರ್ಥ ನೋಡೆಂದ ೭೯

ಇದೆಯಸಂಖ್ಯಾತ ಕ್ಷಿತೀಶ್ವರ
ರುದಿತ ಕೃತಪುಣ್ಯೋಪಚಯ ಭೋ
ಗದಲಿ ಭಾರತ ವರುಷ ನಿಮ್ಮದು ಪುಣ್ಯಭೂಮಿ ಕಣ
ಇದರೊಳಗೆ ಜಪ ಯಜ್ಞ ದಾನಾ
ಭ್ಯುದಯ ವೈದಿಕ ಕರ್ಮನಿಷ್ಠರ
ಪದವಿಗಳ ಪರುಠವಣೆಯನು ಕಲಿಪಾರ್ಥ ನೋಡೆಂದ ೮೦

ಹೊಳೆವುತಿದೆ ದೂರದಲಿ ರಜತಾ
ಚಲವ ಕಂಡಂದದಲಿ ಕೆಲದಲಿ
ಬಲವಿರೋಧಿಯ ಪಟ್ಟದಾನೆ ಸುರೇಂದ್ರ ನಂದನನೆ
ನಿಳಯುವದೆನೆ ಸುದೂರದಲಿ ತಳ
ತಳಿಸುವಮಲ ಮುನಿಪ್ರಭಾ ಪರಿ
ವಳಯ ರಶ್ಮಿ ನಿಬದ್ಧವಮರಾವತಿಯ ನೋಡೆಂದ ೮೧

ಹೊಕ್ಕನಮರಾವತಿಯನರ್ಜುನ
ನೆಕ್ಕಸರದಲುಪಾರ್ಜಿಸಿದ ಪು
ಣ್ಯಕ್ಕೆ ಸರಿಯೇ ನಳ ನಹುಷ ಭರತಾದಿ ಭೂಮಿಪರು
ಉಕ್ಕಿದವು ಪರಿಮಳದ ತೇಜದ
ತೆಕ್ಕೆಗಳು ಲಾವಣ್ಯ ಲಹರಿಯ
ಸೊಕ್ಕುಗಳ ಸುರ ಸೂಳೆಗೇರಿಗಳೊಳಗೆ ನಡೆ ತಂದ ೮೨

ಇಳಿದು ರಥವನು ದಿವಿಜರಾಯನ
ನಿಳಯವನು ಹೊಕ್ಕನು ಕಿರೀಟಿಯು
ನಳವಿಯಲಿ ಕಂಡಿದಿರು ಬಂದನು ನಗುತ ಶತಮನ್ಯು
ಸೆಳೆದು ಬಿಗಿಯಪ್ಪಿದನು ಕರದಲಿ
ತುಳುಕಿ ಕರವನು ತಂದು ತನ್ನಯ
ಕೆಲದೊಳಗೆ ಕುಳ್ಳಿರಿಸಿದನು ಸಿಂಹಾಸನಾರ್ಧದಲಿ ೮೩

ನೂರು ಪಶುಗೆಡಹಿಗೆ ಸುರೇಂದ್ರನು
ಮಾರುವನು ಗದ್ದುಗೆಯ ಬರಿದೇ
ಸೂರೆಗೊಂಡನು ಸುರಪತಿಯ ಸಿಂಹಾಸನದ ಸಿರಿಯ
ಮೂರು ಯುಗದರಸುಗಳೊಳೀತಗೆ
ತೋರಲೆಣೆಯಿಲ್ಲೆನಲು ಶಕ್ರನ
ನೂರು ಮಡಿ ತೇಜದಲಿ ತೊಳ ತೊಳಗಿದನು ಕಲಿಪಾರ್ಥ ೮೪

ನುಸಿಗಳಿವದಿರು ಮರ್ತ್ಯರೆಂಬವ
ರೊಸಗೆಯಮರಾವತಿಯೊಳೇನಿದು
ಹೊಸತಲಾ ಬಂದಾತನಾರೋ ಪೂತುರೇಯೆನುತ
ವಸುಗಳಾದಿತ್ಯರು ಭುಜಂಗಮ
ವಿಸರ ಗಂಧರ್ವಾದಿ ದೇವ
ಪ್ರಸರ ಬಂದುದು ಕಾಣಿಕೆಗೆ ಪುರುಹೂತ ನಂದನನ ೮೫

ಅಂದಿನುತ್ಸವದಮರ ನಿಕರದ
ಸಂದಣಿಯನೇನೆಂಬೆನಿಂದ್ರನ
ಮಂದಿರದೊಳೊತ್ತೊತ್ತೆಯಾದುದು ಜನದ ಧೊಂಬಿಯಲಿ
ಮಂದಿ ತೊಲಗಲಿ ತೆರಹುಗೊಡು ಹೊಯ್
ಮುಂದಣವರನು ಗಜಬಜವ ಮಾ
ಣೆಂದು ಗರ್ಜಿಸಿತಿಂದ್ರನಾಸ್ಥಾನದಲಿ ಸುರನಿಕರ ೮೬

ನೂಕು ಬಾಗಿಲ ಚಾಚು ಬಣಗು ದಿ
ವೌಸಕರ ನಿಲಿಸಲ್ಲ ಪುಣ್ಯರ
ನೇಕೆ ಹೊಗಿಸಿದೆ ಬಹಳ ದಾನ ತಪೋವಿವರ್ಜಿತರ
ಓಕುಳಿಯ ನೆವದಿಂದ ತೆಕ್ಕೆಯ
ಬಾಕುಳಿಗಳುರವಣಿಸಿತೇ ತಮ
ಗೇಕೆ ರಂಭಾದಿಗಳ ಸೋಕೆಂದುದು ಸುರಸ್ತೋಮ ೮೭

ತೊಲಗಿಸೋ ಮಂದಿಯನು ತೆಗೆ ಬಾ
ಗಿಲನೆನಲು ಕವಿದುದು ಸುರೇಂದ್ರನ
ಲಲನೆಯರು ಲಾವಣ್ಯ ಲಹರಿಯ ಲಲಿತ ವಿಭ್ರಮದ
ಸುಳಿಗುರುಳ ನಿಟ್ಟೆಸಳುಗಂಗಳ
ಹೊಳೆವ ಕದಪಿನ ನುಣ್ಗೊರಳ ಬಲು
ಮೊಲೆಯ ಮೋಹರ ನೂಕಿತಮರೀ ವಾರನಾರಿಯರ ೮೮

ಉಗಿದರೋ ಕತ್ತುರಿಯ ತವಲಾ
ಯಿಗಳ ಮುಚ್ಚಳವೆನೆ ಕವಾಟವ
ತೆಗೆಯೆ ಕವಿದರು ದಿವ್ಯಪರಿಮಳಸಾರ ಪೂರವಿಸೆ
ಹೊಗರಲಗು ಹೊಳಹುಗಳ ಕಡೆಗ
ಣ್ಣುಗಳ ಬಲುಗರುವಾಯಿ ಮುಸುಕಿನ
ಬಿಗುಹುಗಳ ಬಿರಿದಂಕಕಾಂತಿಯರಿಂದ್ರನೋಲಗದ ೮೯

ನೇವುರದ ನುಣ್ದನಿಯ ಕಾಂಚಿಯ
ಕೇವಣದ ಕಿಂಕಿಣಿಯ ರಭಸದ
ನೇವಣಗಳುಲುಹುಗಳ ಮೌಳಿಯ ಮುರಿದ ಮುಸುಕುಗಳ
ಭಾವದುಬ್ಬಿನ ಚೆಲ್ಲೆಗಂಗಳ
ಡಾವರದ ಡೊಳ್ಳಾಸಕಾತಿಯ
ರಾ ವಿಬುಧಪತಿಯೋಲಗವ ಹೊಕ್ಕರು ನವಾಯಿಯಲಿ ೯೦

ವರ ತಿಲೋತ್ತಮೆ ರಂಭೆ ಮಧುರ
ಸ್ವರೆ ಘೃತಾಚಿ ಸುಕೇಶಿ ಗೌರೀ
ಶ್ವರಿ ವರೂಥಿನಿ ಪೂರ್ವಚಿತ್ತಿ ಸುಲೇಖೆ ಚಿತ್ರರಥಿ
ಸುರಭಿಗಂಧಿನಿ ಚಾರುಮುಖಿ ಸೌಂ
ದರಿಯನಿಧಿಯೂರ್ವಶಿ ಸುಲೋಚನೆ
ಸುರಸೆಯೆನಿಪಂಗನೆಯರೈದಿತು ಕೋಟಿ ಸಂಖ್ಯೆಯಲಿ ೯೧

ಏನನೆಂಬೆನು ಜೀಯ ಶಕ್ರಾ
ಸ್ಥಾನವಲ್ಲಾ ದಿವ್ಯವಾದ್ಯ ಸು
ಗಾನ ನರ್ತನ ವಿಮಳ ತೂರ್ಯತ್ರಯುದ ಮೇಳವದ
ಆ ನಿತಂಬಿನಿಯುರ ಸುರೇಖಾ
ಸ್ಥಾನಕದ ನಿರುಗೆಯ ಸುಘಾಳದ
ನೂನ ಸಮ್ಮೋಹನದ ತೂಕದ ಭಾವಭಂಗಿಗಳ ೯೨

ರಸದ ಸಂಸ್ಥಾಪನೆಯ ಭಾವದ
ಬೆಸುಗೆಗಳ ಹಸ್ತಾಭಿನಯ ದೃ
ಕ್ಪ್ರಸರಣದವರ ಸಾತ್ವಿಕಾಂಗಿಕ ಸುಗತಿ ವಿಭ್ರಮದ
ವಿಷಮ ಸಮಕರಣದ ಕಳಾಪದ
ಕುಸುರಿಗಳ ವರಲಾಸ್ಯ ತಾಂಡವ
ವೆಸೆದುದೈ ರಂಭಾದಿ ನರ್ತಕಿಯರಲಿ ಹೊಸತೆನಿಸಿ ೯೩

ಗಾನ ರಸದಲಿ ಮುಳುಗಿತಮರಾ
ಸ್ಥಾನವೆತ್ತಣ ವಾದ್ಯ ನರ್ತನ
ಗಾನ ನರ್ತನವೆನಲು ಸಮ್ಮೋಹಿಸಿತು ಘನವಾದ್ಯ
ಗಾನ ವಾದ್ಯವಿದೆತ್ತ ನೃತ್ಯರ
ಸಾನುಭವ ಭಾರವಿಸಿತನ್ಯೋ
ನ್ಯಾನು ರಂಜಕವಾಯ್ತು ತೂರ್ಯತ್ರಯುದ ಮೇಳಾಪ ೯೪

ಈಯಮಾನುಷ ನೃತ್ಯವಾದ್ಯ ಸು
ಗೇಯ ರಸದಲಿ ಮುಳುಗಿ ಕರಣದ
ಲಾಯ ತೊಡಕದೆ ಪಾರ್ಥನಿದ್ದನು ಧೈರ್ಯಶಿಖರದಲಿ
ಈ ಯುವತಿ ತಾನಾವಳೋ ಕುಸು
ಮಾಯುಧನ ಖಂಡೆಯವಲಾ ಮಝ
ಮಾಯೆಯೆನುತೂರ್ವಶಿಯನೆವೆಯಿಕ್ಕದೆ ನಿರೀಕ್ಷಿಸಿದ ೯೫

ಪಾರುಖಾಣೆಯವಿತ್ತನಾ ಜಂ
ಭಾರಿಯೂರ್ವಶಿ ರಂಭೆ ಮೇನಕೆ
ಗೌರಿ ಮೊದಲಾದಖಿಳ ಪಾತ್ರಕೆ ಪರಮ ಹರುಷದಲಿ
ನಾರಿಯರು ನಿಖಿಳಾಮರರು ಬೀ
ಡಾರಕೈದಿತು ಹರೆದುದೋಲಗ
ವಾರತಿಯ ಹರಿವಾಣ ಸುಳಿದುದು ಸಾಲು ಸೊಡರುಗಳ ೯೬

ಅರಸ ಕೇಳಾರೋಗಿಸಿದರಿ
ಬ್ಬರು ಸಮೇಳದಲಿದ್ದು ಬೇರೊಂ
ದರಮನೆಗೆ ಕಳುಹಿದನು ಪವಡಿಸುವೊಡೆ ನಿಜಾತ್ಮಜನ
ಸುರಪನಿತ್ತಲು ಚಿತ್ರಸೇನನ
ಕರೆಸಿದನು ಫಲುಗುಣನ ಭಾವವ
ನರುಹಿದನು ನಮ್ಮೂರ್ವಶಿಯ ಕಳುಹೆಂದು ನೇಮಿಸಿದ ೯೭

ಇನಿಬರಿರೆ ರಂಭಾದಿ ಸೀಮಂ
ತಿನಿಯರೊಳಗೂರ್ವಶಿಯೊಳಾದುದಂ
ವನ ಧನಂಜಯನೀಕ್ಷಿಸಿದನನಿಮೇಷ ದೃಷ್ಟಿಯಲಿ
ವನಿತೆಯನು ಕಳುಹೇಳು ನೀನೆಂ
ದೆನೆ ಹಸಾದವೆನುತ್ತ ದೇವಾಂ
ಗನೆಯ ಭವನಕೆ ಬಂದನೀತನು ಹರಿಯ ನೇಮದಲಿ ೯೮

ತಾಯೆ ಚಿತ್ತೈಸರಮನೆಯ ಸೂ
ಳಾಯಿತನು ಬಂದೈದನೆನೆ ಕಮ
ಲಾಯತಾಂಬಕಿ ಚಿತ್ರಸೇನನ ಕರೆಸಿದಳು ನಗುತ
ತಾಯೆಯಸುತ ವಸ್ತ್ರಾಭರಣದ ಪ
ಸಾಯವಿತ್ತಳು ಪರಿಮಳದ ತವ
ಲಾಯಿಗಳ ನೂಕಿದಳು ವರ ಕತ್ತುರಿಯ ಕರ್ಪುರದ ೯೯

ಅಣಕವಲ್ಲಿದು ರಾಯನಟ್ಟಿದ
ಮಣಿಹವೋ ನಿಜಕಾರ್ಯ ಗತಿಗಳ
ಕುಣಿಕೆಯ ಕರ್ತವ್ಯವಾವುದು ನಿಮಗೆ ನಮ್ಮಲ್ಲಿ
ಗುಣಭರಿತ ಹೇಳೆನಲು ನಸುನಗೆ
ಕುಣಿಯೆ ಮುಖದಲಿ ಮಾನಿನಿಗೆ ವೆಂ
ಟಣಿಸಿ ಲಜ್ಜಾಭರದಿ ನುಡಿದನು ದೂತನೀ ಮಾತ ೧೦೦

ಎಮಗೆ ಮಗನರ್ಜುನನು ನೀನಿಂ
ದೆಮಗೆ ಸೊಸೆಯಹುದಾತನಂತ
ಸ್ತಿಮಿರವನು ಕಳೆ ನಿನ್ನ ಕುಚಯುಗ ಕಾಂತಿ ಲಹರಿಯಲಿ
ಕಮಲಮುಖಿ ನೀ ಕಮಲವಾತನು
ಭ್ರಮರ ನೀ ಸುರವನದ ಸಿರಿಮಧು
ಸಮಯವರ್ಜುನನೆಂದು ಬೆಸಸಿದನಮರಪತಿಯೆಂದ ೧೦೧

ಕೇಳುತವೆ ರೋಮಾಂಚ ಲಜ್ಜೆಯ
ಜೋಳಿಯೆದ್ದುದು ಝೋಂಪಿಸಿತು ಪುಳ
ಕಾಳಿ ಭಯವನು ಪಂಟಿಸಿದುದನುರಾಗದಭಿಮಾನ
ಮೇಲೆ ಮೇಲಭಿಲಾಷೆ ಧೈರ್ಯವ
ಚಾಳವಿಸೆ ಪರಿತೋಷ ಪೂರಣ
ದೇಳುಮುಳುಗಾಯ್ತುತ್ತರಕೆ ನಸುಂಬಾಗಿದಳು ಶಿರವ ೧೦೨

ಆತನುತ್ತಮ ನಾಯಕನು ವಿ
ಖ್ಯಾತೆ ನೀ ಸುರಲೋಕದಲಿ ಲ
ಜ್ಜಾತಿಶಯವೇಕಿಲ್ಲಿ ನಾವೇ ನಿಮ್ಮ ಪರಿವಾರ
ಸೋತಡೆಯು ದಿಟ ಭಂಗವಲ್ಲ ಪು
ರಾತನದ ನಳ ನಹುಷ ಭರತ ಯ
ಯಾತಿ ನೃಪರೊಳಗೀತನಗ್ಗಳನಬಲೆ ಕೇಳೆಂದ ೧೦೩

ರಾಯನಟ್ಟಿದ ನೇಮ ಗಡ ಕಮ
ನೀಯವಲ್ಲಾ ನಿನ್ನ ನುಡಿ ರಮ
ಣೀಯತರವಿದು ನಿನ್ನ ರಚನೆ ಮಹಾನುಭಾವವಲೆ
ಆಯಿತಿದು ನೀ ಹೋಗೆನುತಲಬು
ಜಾಯತಾಕ್ಷಿ ಮಹೋತ್ಸವದಿ ನಾ
ರಾಯಣನ ಮೈದುನನ ಬರೆದಳು ಚಿತ್ತಭಿತ್ತಿಯಲಿ ೧೦೪

ಎಂಟನೆಯ ಸಂಧಿ

ಸೂ. ಭಯಭರಿತ ಭಕ್ತಿಯಲಿಕಾಮಾ
ರಿಯನು ಗೆಲಿದರ್ಜುನನು ಹರ ವೈ
ರಿಯನು ಗೆಲಿದನು ಧೈರ್ಯದಿಂದೂರ್ವಶಿಯ ಶಾಪದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಪಾರ್ಥನ ಮೈಯ ಹುಲು ರೋ
ಮಾಳಿ ಹರಿಯದು ಮನುಮಥನ ಖಂಡೆಯದ ಗಾಯದಲಿ
ಬೀಳುಕೊಟ್ಟನು ಚಿತ್ರಸೇನನ
ನಾ ಲತಾಂಗಿ ಸಹಸ್ರಸಂಖ್ಯೆಯ
ಖೇಳಮೇಳದ ಸತಿಯರನು ಕರೆಸಿದಳು ಹರುಷದಲಿ ೧

ವನಜಲೋಚನೆ ಮಾಡಿದಳು ಮ
ಜ್ಜನವನಮಳ ದುಕೂಲ ಪರಿ ಮಂ
ಡನದಲೆಸೆದಳು ವಿವಿಧ ರತ್ನಾಭರಣ ಶೋಭೆಯಲಿ
ತನತನಗೆ ಭರಣಿಗಳಲನುಲೇ
ಪನವ ತಂದರು ವಿಳಸದಧಿವಾ
ಸನೆಯ ಕುಸುಮದ ಮೊಗ್ಗೆಯಲಿ ರಚಿಸಿದರು ಸಿರಿಮುಡಿಯ ೨

ತಿಗುರ ಗೆಲಿದಳು ತಿಲಕವನು ತೆ
ತ್ರಿಗರಲಂಕರಿಸಿದರು ಹೊಳಹಿನ
ಹೊಗರ ಹೊಸ ಜವ್ವನದ ಜೋಡಿಯು ಜಾಡಿಯಿಮ್ಮಡಿಸೆ
ಉಗಿದೊರೆಯು ಕೂರಲಗೊ ಧಾರೆಯು
ಮಿಗೆ ಹಿಡಿದ ಖಂಡೆಯವೊ ಕಾಮನ
ಹಗೆಗೆ ಹುಟ್ಟಿದ ಧೂಮಕೇತುವೊ ರೂಪು ಸುರಸತಿಯ ೩

ಪರಿಮಳದ ಪುತ್ಥಳಿಯೊ ಚೆಲುವಿನ
ಕರುವಿನೆರಕವೊ ವಿಟರ ಪುಣ್ಯದ
ಪರಿಣತೆಯೊ ಕಾಮುಕರ ಭಾಗ್ಯದ ಕಲ್ಪತರುಫಲವೊ
ಸ್ಮರನ ವಿಜಯಧ್ವಜವೊ ಮನ್ಮಥ
ಪರಮ ಶಾಸ್ತ್ರದ ಮೂಲಮಂತ್ರವೊ
ಸುರಸತಿಯರಧಿ ದೇವತೆಯೊ ವರ್ಣಿಸುವೊಡರಿದೆಂದ ೪

ಲೋಕವಶ್ಯದ ತಿಲಕವೋ ಜಗ
ದೇಕ ರತ್ನವೊ ವಿಗಡ ಮುನಿ ಚಿ
ತ್ತಾಕರುಷಣದ ಮಂತ್ರವಾದವೊ ಖಂಡಿತಪಃಫಲವೊ
ಲೋಕಸೌಂದರ್ಯೈಕ ಸರ್ಗವೊ
ನಾಕಸುಖ ಸಾಕಾರವೊ ರೂ
ಪೈಕ ತಾಣವೊ ಚಿತ್ರವಾಯ್ತೂರ್ವಶಿಯ ಬರವಿನಲಿ ೫

ನೆರದರಬಲೆಯರಂಗವಟ್ಟದ
ಪರಿಮಳದ ಮಂತ್ರಿಗೆಯ ತುಂಬಿಯ
ತೆರಳಿಕೆಯ ಕತ್ತಲೆಯ ಕೆದರುವ ಕಣ್ಣ ಬೆಳಗುಗಳ
ಪರಿಪರಿಯ ಹೊಂದೊಡಿಗೆಗಳ ಪರಿ
ಪರಿಗಳುಡಿಗೆಯ ದೇಶಿ ಮಿಗೆ ಪರಿ
ಪರಿಯ ಮುಡಿಗಳ ಮುಗುದೆಯರು ಬಳಸಿದರು ಬಾಲಕಿಯ ೬

ಹೆಗಲು ಹಡಪದ ಹಿಡಿದ ಮುಕುರಾ
ಳಿಗಳ ಚಿಮ್ಮುವ ಸೀಗುರಿಯ ಹಾ
ವುಗೆಯ ಹೇಮನಿಬಂಧ ಕಳಶದ ತಾಳವೃಂತಕದ
ಮುಗುದೆಯರು ಮನುಮಥನ ಮೊನೆಯಾ
ಳುಗಳು ಮುಸುಕಿತು ಮಾನಿನಿಯ ದಂ
ಡಿಗೆಯ ಮೈಕಾಂತಿಗಳ ದೂವಾಳಿಗಳ ಲಹರಿಯಲಿ ೭

ತುರಗಮೇಧದ ರಾಜಸೂಯದ
ವರ ಮಹಾಕ್ರತುಕಾರರೀಕೆಯ
ಚರಣದುಂಗುಟ ತುದಿಯ ಕಾಂಬರೆ ಪೂತು ಫಲುಗುಣನ
ಪರಮ ಪುಣ್ಯವದೇನು ತಾನಿ
ದ್ದರಮನೆಗೆ ಸತಿ ಬಂದಳೇನ
ಚ್ಚರಿಯೆನುತ ಹೊಗಳಿದರು ಮಾಗಧರಿಂದ ನಂದನನ ೮

ಧರಣಿಪತಿ ಕೇಳವರ ತೊತ್ತಿರ
ಹೊರಗೆಲಸದವದಿರ ಪಸಾಯಿತೆ
ಯರಿಗೆ ಪಡಿಗವ ನೀಡಸಲ್ಲರು ಸೋಮಯಾಜಿಗಳು
ವರುಣಸೂನು ಜಯಂತ ನಳಕೂ
ಬರರು ಸಮಯವನೊಮ್ಮೆ ಕಾಣದೆ
ವರುಪವೋಲೈಸುವರು ಸೌಧದ ದಾರವಟ್ಟದಲಿ ೯

ಜನಮನದ ಸಂಕಲೆವನೆಯೊ ಲೋ
ಚನಮೃಗದ ತಡೆವೇಂಟೆಕಾತಿಯೊ
ಮನುಮಥನ ಸಂಜೀವನೌಷಧಿಯೋ ಮಹಾದೇವ
ಮನಸಿಜನ ಮಾರಾಂಕ ಕಾಮುಕ
ಜನದ ಜೀವಾರ್ಥಕ್ಕೆ ವಿಭುವೆಂ
ದೆನಿಸಿದೂರ್ವಶಿ ಬಂದಳರ್ಜುನ ದೇವನರಮನೆಗೆ ೧೦

ಮೆಲುನುಡಿಗೆ ಗಿಣಿ ಹೊದ್ದಿದವು ಸರ
ದುಲಿಗೆ ಕೋಗಿಲೆಯೌಕಿದವು ಪರಿ
ಮಳದ ಪಸರಕೆ ತೂಳಿದವು ತುಂಬಿಗಳು ಡೊಂಬಿಯಲಿ
ಹೊಳೆವ ಮುಖಕೆ ಚಕೋರಚಯವಿ
ಟ್ಟಳಿಸಿದವು ನೇವುರದ ಬೊಬ್ಬೆಗೆ
ಸಿಲುಕಿದವು ಹಂಸೆಗಳು ಕಮಲಾನನೆಯ ಕೆಳದಿಯರ ೧೧

ಅಲರ್ದ ಪೊಂದಾವರೆಯ ಹಂತಿಯೊ
ತಳಿತ ಮಾವಿನ ಬನವೊ ಮಿಗೆ ಕ
ತ್ತಲಿಪ ಬಹಳ ತಮಾಲ ಕಾನನವೋ ದಿಗಂತದಲಿ
ಹೊಳೆವ ವಿದ್ರುಮ ವನವೊ ಕುಸುಮವೊ
ಚ್ಚಲಿತ ಕೇತಕಿ ದಳವೊ ರಂಭಾ
ವಳಿಯೊ ಕಾಂತಾಜನವೊ ಕಮಲಾನನೆಯ ಮುಂಗುಡಿಯೊ ೧೨

ಬಂದಳೂರ್ವಶಿ ಬಳ್ಳಿ ಮಿಂಚಿನ
ಮಂದಿಯಲಿ ಮುರಿದಿಳಿವ ಮರಿ ಮುಗಿ
ಲಂದದಲಿ ದಂಡಿಗೆಯನಿಳಿದಳು ರಾಜಭವನದಲಿ
ಮುಂದೆ ಪಾಯವಧಾರು ಸತಿಯರ
ಸಂದಣಿಯ ಸಿಂಜಾ ರವದ ಸೊಗ
ಸಿಂದ ಶಬ್ದಬ್ರಹ್ಮ ಸೋತುದು ಸೊರಹಲೇನೆಂದ ೧೩

ಬಾಗಿಲಲಿ ಬಾಗಿಲಲಿ ನಿಂದರು
ಸೋಗೆಗಣ್ಣಬಲೆಯರು ಸೆಜ್ಜೆಯ
ಬಾಗಿಲಲಿ ಚಾಮರದ ಹಡಪದ ಚಪಲೆಯರು ಸಹಿತ
ಆ ಗರುವೆ ಹೊಕ್ಕಳು ಮಹಾಹಿಯ
ಭೋಗತಲ್ಪದ ಹರಿಯೊಲಿಹ ಶತ
ಯಾಗ ಸುತನನು ಕಂಡಳಂಗನೆ ಮಣಿಯ ಮಂಚದಲಿ ೧೪

ಹೊಳೆವ ಮಣಿದೀಪಾಂಶುಗಳ ಮು
ಕ್ಕುಳಿಸಿದವು ಕಡೆಗಂಗಳಿಂದೂ
ಪಳದ ಭಿತ್ತಿಯ ಬೆಳಗನಣೆದುದು ಬಹಳ ತನುಕಾಂತಿ
ಕೆಳದಿಯರ ಕಂಠದಲಿ ಕೈಗಳ
ನಿಳುಹಿ ನಿಂದಳು ತರುಣಿ ನೃಪ ಕುಲ
ತಿಲಕನಂಗೋಪಾಂಗದಲಿ ಹರಹಿದಳು ಕಣ್ಮನವ ೧೫

ಎಳೆಯ ಬೆಳದಿಂಗಳವೊಲೀಕೆಯ
ತಳತಳಿಪ ಮುಖಚಂದ್ರಮನ ತಂ
ಬೆಳಗು ಸುಳಿದುದು ಸಾರತರ ಪರಿಮಳದ ಪೂರದಲಿ
ತಿಳಿದುದೀತನ ನಿದ್ರೆ ಕರಣಾ
ವಳಿಯ ಪರಮ ಪ್ರೀತಿರಸದಲಿ
ಮುಳುಗಿ ಸುಖಭಾರದಲಿ ಭುಲ್ಲವಿಸಿದನು ಕಲಿಪಾರ್ಥ ೧೬

ಹರ ಮಹಾದೇವೀಯುಘಾಟದ
ಪರಿಮಳವಿದೆತ್ತಣದೆನುತ ಮೈ
ಮುರಿದು ಕಂಡನಪೂರ್ವ ಪರಿಮಳ ಸಾರದಲಿ ಪಾರ್ಥ
ಕಿರಣ ಲಹರಿಯ ದಿವ್ಯ ರತ್ನಾ
ಭರಣ ರುಚಿರತರ ಪ್ರಭಾ ಪುಂ
ಜರದೊಳಗೆ ಹೊಳೆಹೊಳೆವ ಮದನಾಲಸೆಯನೂರ್ವಶಿಯ ೧೭

ಹಾ ಮಹಾ ದೇವಿಯುರಲಾ ಸು
ತ್ರಾಮನೋಲಗದೊಳಗೆ ನರ್ತನ
ರಾಮಣೀಯಕ ರಚನೆಯಲಿ ರಂಜಿಸಿದಳಾ ಸಭೆಯ
ಈ ಮಹಿಳೆಯಭಿವಂದನೀಯೆ ನಿ
ರಾಮಯದ ಶಶಿವಂಶ ಜನನಿ ಸ
ನಾಮೆಯಲ್ಲಾ ಶಿವಯೆನುತ ಮಣಿಮಂಚದಿಂದಿಳಿದ ೧೮

ಏನು ಬಿಜಯಂಗೈದಿರಿತ್ತಲು
ಮಾನನಿಧಿ ಕುಳ್ಳಿರಿ ಸುರೇಂದ್ರನ
ಮಾನಿನಿಯರಭಿವಂದನೀಯರು ನಾವು ಕೃತಾರ್ಥರಲ
ಏನು ಬೆಸಸೆನಗೇನು ಹದ ನಿಮ
ಗಾನು ಮಗನುಪಚಾರವೇಕೆ ಮ
ನೋನುರಾಗದಲರುಹಿಯೆಂದನು ಪಾರ್ಥನೂರ್ವಶಿಗೆ ೧೯

ನುಡಿಗೆ ಬೆರಗಾದಳು ಮನೋಜನ
ಸಡಗರಕೆ ತೆಕ್ಕಿದಳು ಪಾರ್ಥನ
ನಡವಳಿಗೆ ಮೆಚ್ಚಿದಳು ಬೆಚ್ಚಿದಳಂಗಜಾಸ್ತ್ರದಲಿ
ಕಡುಗಿದಳು ಖಾತಿಯಲಿ ಲಜ್ಜೆಯ
ಬಿಡೆಯದಲಿ ಭಯಗೊಂಡಳಂಗನೆ
ಮಿಡುಕಿದಳು ವಿವಿಧಾನುಭಾವದ ರಸದ ಭಂಗಿಯಲಿ ೨೦

ಏಕೆ ನುಡಿದನೊ ಚಿತ್ರಸೇನನ
ದೇಕೆ ನಾ ಕೈಕೊಂಡೆನೆತ್ತಣ
ಕಾಕು ಮೂಳಗೆ ಕೋಳು ಹೋದೆನೊ ಕಾಮನೆಂಬವಗೆ
ಲೋಕ ವರ್ತಕವಲ್ಲದಿವನನ
ದೇಕೆ ವಿಧಿ ನಿರ್ಮಿಸಿದನೋ ನಾ
ನೇಕೆ ನರನೇಕೆನುತ ಸುಯ್ದಳು ಬೈದು ಕಮಲಜನ ೨೧

ವಿಕಳಮತಿಯೋ ಮೋಣಿವ ನಪುಂ
ಸಕನೊ ಜಡನೋ ಶ್ರೋತ್ರಿಯನೋ ಬಾ
ಧಕನೊ ಖಳನೋ ಖೂಳನೋ ಮಾನವ ವಿಕಾರವಿದೊ
ವಿಕಟ ತಪಸಿನ ದೇವ ದೈತ್ಯರ
ಮಕುಟಮಾಂತುದು ಮಾಮ ಪಾದವ
ನಕಟ ಕೆಟ್ಟೆನಲಾಯೆನುತ ಕರಗಿದಳು ನಳಿನಾಕ್ಷಿ ೨೨

ಎಲವೊ ರಾಯನ ಹೇಳಿಕೆಯಲಿಂ
ದಲೆದನೆನ್ನನು ಚಿತ್ರಸೇನಕ
ನಲಿಗಿ ನಟ್ಟವು ಕಾಮಶರವೆನ್ನಂತರಂಗದಲಿ
ಒಲಿದು ಬಂದಬಲೆಯರ ಟೆಕ್ಕರಿ
ಗಳಿವುದೇ ವಿಟ ಧರ್ಮವಕಟಾ
ತಿಳಿಯಲಾ ಶಾಪವಳೆಂಬುದನೆಂದಳಿಂದುಮುಖಿ ೨೩

ಶಿವ ಶಿವೀ ಮಾತೇಕೆ ಕಾಮನ
ಬವಣೆಯಲಿ ನೀವರಿಯದಿರೆ ವಾ
ಸವನ ನೇಮವು ಚಿತ್ರಸೇನನ ನುಡಿಗಳಂತಿರಲಿ
ಎವಗೆ ಕರ್ತವ್ಯದಲಿ ಮನ ಸಂ
ಭವಿಸುವುದೆ ನೀವೆಮ್ಮ ವಂಶೋ
ದ್ಭವಕೆ ಜನನಿಯಲಾಯೆನುತ ವಿನಯದಲಿ ನರ ನುಡಿದ ೨೪

ನಾರಿ ನೀ ಪೂರ್ವದಲಿ ನಮ್ಮ ಪು
ರೂರವನ ಸತಿ ನಿನಗೆ ಬಳಿಕ ಕು
ಮಾರ ಜನಿಸಿದನಾಯುವಾತನೊಳುದಿಸಿದನು ನಹುಷ
ವೀರ ರಾಜ ಪರಂಪರೆಯು ಬರ
ಲಾರಿಗಾವುದಿಸಿದೆವು ನಮ್ಮ ವಿ
ಚಾರಿಸಿದುದಿಲ್ಲಾ ಯೆನುತ ವಿನಯದಲಿ ನರ ನುಡಿದ ೨೫

ಪ್ರಣವದರ್ಥ ವಿಚಾರವೆತ್ತಲು
ಗಣಿಕೆಯರಮನೆಯ ಸ್ವರಾಕ್ಷರ
ಗಣಿತ ಲಕ್ಷಣವೆತ್ತ ರತಿಕೇಳೀ ವಿಧಾನದಲಿ
ಬಣಗು ಭಾರತ ವರ್ಷದವದಿರ
ಭಣಿತ ನಿಮ್ಮ ದೇವಲೋಕಕೆ
ಸಣಬಿನಾರವೆ ಚೈತ್ರರಥದೊಳಗೆಂದಳಿಂದುಮುಖಿ ೨೬

ಅಯ್ಯನಯ್ಯನ ನಿಮ್ಮವರ ಮು
ತ್ತಯ್ಯನಾತನ ಭಾವಮೈದುನ
ನಯ್ಯನಗ್ರಜರನುಜರೆಂಬೀ ಜ್ಞಾತಿ ಬಾಂಧವರ
ಕೈಯಲರಿಗಳ ಹೊಯ್ದು ಶಿರನರಿ
ದುಯ್ಯಲಾಡಿದವರ್ಗೆ ಮೋಕ್ಷ ಮುಖ
ದಯ್ಯಗಳಿಗಾನೊಬ್ಬಳೆಂದಳು ನಗುತ ನಳಿನಾಕ್ಷಿ ೨೭

ಮರೆಯ ಮಾತಂತಿರಲಿ ಸಾಕದ
ಮರೆದು ಕಳೆ ಮಾನಿನಿಯರಿಚ್ಛೆಯ
ನರಿಯದವನು ಸುರೇಂದ್ರನಾಗಲಿ ಚಂದ್ರನಾಗಿರಲಿ
ಕುರಿ ಕಣಾ ಫಡ ಖೂಳ ನೀನೆಂ
ತರಿವೆಯೆನೆ ನಡನಡುಗಿ ಕೈ ಮುಗಿ
ದೆರಗಿ ಮಗುಳೀ ಮಾತನೆಂದನು ಪಾರ್ಥನೂರ್ವಶಿಗೆ ೨೮

ಇದು ಮನುಷ್ಯಶರೀರ ತದ್ಧ
ರ್ಮದಲಿ ತನ್ನವಸಾನ ಪರಿಯಂ
ತಿದರೊಳವ್ಯಭಿಚಾರದಲಿ ವರ್ತಿಸಿದ ಬಳಿಕಿನಲಿ
ತ್ರಿದಶರಲ್ಲಿಗೆ ಬಂದರಾ ಮಾ
ರ್ಗದಲಿ ನಡೆವುದು ದೇವತಾ ದೇ
ಹದಲಿ ಬಲವತ್ತರವು ದೇಹ ವಿಶೇಷ ವಿಧಿಯೆಂದ ೨೯

ಅಹುದಹುದಲೇ ಶ್ರೌತಪಥದಲಿ
ಬಹಿರಿ ನೀವೇ ಸ್ಮಾರ್ತವಿಧಿ ಸ
ನ್ನಿಹಿತರೆಂಬುದನರಿಯದೇ ಮೂಜಗದ ಜನವೆಲ್ಲ
ಮಹಿಳೆಯೊಬ್ಬಳೊಳ್ಳೆವರೊಡಗೂ
ಡಿಹರು ನೀವೇನಲ್ಲಲೇ ನೀ
ಸ್ಪೃಹರು ನೀವ್ ನಮ್ಮಲ್ಲಿ ಹರಹರ ಯೆಂದಳಿಂದುಮುಖಿ ೩೦

ತಾಯ ನೇಮದಲಂದು ಕಮಲದ
ಳಾಯತಾಕ್ಷಿಯ ಕೂಟವೈವರಿ
ಗಾಯಿತಮ ತಪ್ಪೇನು ಜನನಿಯ ನುಡಿಯುಲಂಘ್ಯವಲೆ
ಕಾಯ ಸೌಖ್ಯಕೆ ಕಾಮ ಸುಖದ ವಿ
ಡಾಯ ತತುವಕೆ ದೇಹಗೊಂಡು ನ
ವಾಯಿಯಲಿ ದುರ್ಗತಿಗೆ ದುಪ್ಪಾಳಿಸುವನಲ್ಲೆಂದ ೩೧

ತಾಯ ನೇಮದಲೈವರಿಗೆ ಕಮ
ಲಾಯತಾಕ್ಷಿಯ ಕೂಟವೇ ಸುರ
ರಾಯ ನಿಮ್ಮಯ್ಯನು ವಿಲಂಘ್ಯವೆ ನಿನಗೆ ಪಿತೃವಚನ
ರಾಯನಟ್ಟಲು ಬಂದೆನೀ ಕುಸು
ಮಾಯುಧನ ಕಗ್ಗೊಲೆಯ ಕೆದರುವ
ಪಾಯವನು ನೀ ಬಲ್ಲೆಯೆಂದಳು ವನಿತೆ ವಿನಯದಲಿ ೩೨

ಸರಸಿಜದ ಮಧು ಮಧುಕರನನನು
ಕರಿಸಿದೊಡೆ ಚಂದ್ರಿಕೆ ಚಕೋರನ
ವರಿಸಿದರೆ ನಿಧಿಲಕ್ಷ್ಮಿ ಸುಳಿದರೆ ನಯನ ವೀಧಿಯಲಿ
ಗರುವೆಯರು ಮೇಲಿಕ್ಕಿ ಪುರುಷನ
ನರಸಿದರೆ ಜಾರುವರೆ ಸುಡಲಾ
ಸರಸಿಜವನಾ ಚಂದ್ರಿಕೆಯನಾ ನಿಧಿಯನಾ ವಧುವ ೩೩

ತಿಳುಹಿದೊಡೆ ಸುರ ಲೋಕದವರತಿ
ಗಳಹೆಯರಲಾಯೆಂಬ ಮನ್ಮಥ
ಖಳ ಕಣಾ ನಿಷ್ಕರುಣಿ ನೀ ಸೌಭಾಗ್ಯಗರ್ವದಲಿ
ಬಲುಮೆ ಬಿದ್ದುದು ವಾಸಿಯಲಿ ಕಂ
ದೊಳಸುಗೊಂಡುದು ಕಾಮಶರ ಮನ
ವಳುಕೆ ಕೆಡಹಿತು ವಿರಹತಾಪದಲೆಂದಳಿಂದುಮುಖಿ ೩೪

ಕಾಡಲಾಗದು ನಿಮ್ಮೊಡನೆ ಮುಂ
ದಾಡಲಮ್ಮೆನು ಮನಕೆ ಧೈರ್ಯದ
ಜೋಡ ತೊಟ್ಟಿದಿರಾಗಿ ನಿಲೆ ನನೆಯಂಬು ನಾಟುವುವೆ
ಖೋಡಿಯೇಕಿದಕಪ್ಪ ಮಕ್ಕಳ
ನೋಡ ಬಂದರೆ ಬೇರೆ ಕಷ್ಟವ
ನಾಡುವರೆ ಬಲ್ಲವರು ಬಿಜಯಂಗೈಯಿ ನೀವೆಂದ ೩೫

ರೋಷವೀರೆಲೆಯಾಯ್ತು ಲಜ್ಜೆಯ
ಮೀಸಲಳಿದುದು ಬಲು ವಿಧದ ಬಹು
ವಾಸಿಗಳು ಪಲ್ಲವಿಸಿದವು ಕೆಲ್ಲವಿಸಿತನುತಾಪ
ಆಶೆ ಪೈಸರವೋಯ್ತು ಕಡು ಝಳ
ಸೂಸಿದುದು ಸುಯ್ಲಿನಲಿ ಕಂಗಳು
ಕೇಸುರಿಯ ಮುಕ್ಕುಳಿಸಿದವು ಹೆಕ್ಕಳಿಸಿ ಕಾಮಿನಿಯ ೩೬

ಸೊಂಪಡಗಿತು ಮುಖೇಂದು ತನುಲತೆ
ಕಂಪಿಸಿದುದಡಿಗಡಿಗೆ ಮೈ ತನಿ
ಗಂಪಿನಲಿ ಮಘಮಘಿಸಿತಮಲ ಸ್ವೇದ ಸಲಿಲದಲಿ
ತಂಪಿನಲಿ ಶಿಖಿ ಮಧುರದಲಿ ಕಟು
ನುಂಪಿನಲಿ ಬಿರಿಸಮೃತದಲಿ ವಿಷ
ಗುಂಪಿನಲಿ ನೆಲೆಯಾದವೋಲ್ ಸತಿಗಾಯ್ತು ಘನರೋಷ ೩೭

ಕೆತ್ತಿದವು ತುಟಿ ಕದಪಿನಲಿ ಕೈ
ಹತ್ತಿಸುತ ತೂಗಿದಳು ಶಿರವನು
ತತ್ತರೋಷಾಯುಧವ ಮಸೆದಳು ಧಾರೆಗಂಗಳಲಿ
ಎತ್ತಿದುದ್ವೇಗದ ವಿಕಾರದ
ಚಿತ್ತ ಬುದ್ಧಿ ಮನಂಗಳಾತ್ಮನ
ಜೊತ್ತಿಸಿದವದ್ಭುತದಹಂಕಾರದಲಿ ಕಾಮಿನಿಯ ೩೮

ಎಲವೊ ಭಂಡರ ಭಾವ ಖೂಳರ
ನಿಳಯ ಖಳರಧಿನಾಥ ವಂಚಕ
ತಿಲಕ ಗಾವಿಲರೊಡೆಯ ಬಂಧುವೆ ದುಷ್ಟ ನಾಯಕರ
ಎಲೆ ಮರುಳೆ ತಾನಾವಳೆಂಬುದ
ತಿಳಿಯಲಾ ನೀನಾವನೆಂಬುದ
ನಿಳೆಯರಿಯದೇ ಭಂಡ ಫಡ ಹೋಗೆಂದಳಿಂದುಮುಖಿ ೩೯

ಒಲಿದು ಬಂದವರಾವು ಸೊಬಗಿನೊ
ಳೊಲಿಸಿ ಮರುಗಿಪ ಮಿಂಡ ನೀನತಿ
ಸುಲಭರಾವ್ ದುರ್ಲಭನು ನೀ ದೇವೇಂದ್ರ ಕಟಕದಲಿ
ಎಲೆ ನಪುಂಸಕ ಗಂಡು ವೇಷದ
ಸುಳಿವು ನಿನಗೇಕೆನುತ ಸತಿ ಕಳ
ವಳಿಸಿ ಕರವೆತ್ತಿದಳು ಓಡಿ ಓಡಿ ಶಾಪವಿದೆಯೆನುತ ೪೦

ತುಳುಕಿತದ್ಭುತ ರೋಷ ಸುಯ್ಲಿನ
ಝಳ ಹೊಡೆದು ಮೂಗುತಿಯ ಮುತ್ತಿನ
ಬೆಳಕು ಕುಂದಿತು ಕುಂದಿತಮಳಚ್ಛವಿ ಮುಖಾಂಬುಜದ
ಹೊಳೆ ಹೊಳೆವ ಕೆಂದಳದ ಸೆಳ್ಳುಗು
ರೊಳ ಮಯೂಖದ ಮಣಿಯ ಮುದ್ರಿಕೆ
ಗಳ ಮರೀಚಿಯಲೆಸೆದುದೆತ್ತಿದ ಹಸ್ತವೂರ್ವಶಿಯ ೪೧

ರಾಹು ತುಡುಕಿದ ಶಶಿಯೊ ಮೇಣ್ ರೌ
ದ್ರಾಹಿ ಮಸ್ತಕ ಮಾಣಿಕವೊ ಕಡು
ಗಾಹಿನಮೃತವೊ ಕುಪಿತ ಸಿಂಹದ ಗುಹೆಯ ಮೃಗಮದವೊ
ಲೋಹ ಧಾರೆಯ ಮಧುವೊ ಕಳಿತ ಹ
ಲಾಹಳದ ಕಜ್ಜಾಯವೆನಿಸಿತು
ರೂಹು ಸುಮನೋಹರ ಭಯಂಕರವಾಯ್ತು ಸುರಸತಿಯ ೪೨

ನರಮೃಗಾಧಮ ನಿಮ್ಮ ಭಾರತ
ವರುಷ ಭೂಮಿಯೊಳೊಂದು ವರುಷಾಂ
ತರ ನಪುಂಸಕನಾಗಿ ಚರಿಸು ನಿರಂತರಾಯದಲಿ
ಹರಿಯ ಮರೆಯೊಗು ಹರನ ನೀನನು
ಸರಿಸು ನಿಮ್ಮಯ್ಯಂಗೆ ಹೇಳಿದು
ನಿರುತ ತಪ್ಪದು ಹೋಗೆನುತ ಮೊಗದಿರುಹಿದಳು ಚಪಲೆ ೪೩

ಮೂಗನಾದನು ಬಹಳ ಧೈರ್ಯದ
ಬೇಗಡೆಯ ಬಿಡೆ ಬಿಗಿದ ಬೆರಗಿನ
ಮೂಗಿನಂಗುಲಿಗಳ ಧನಂಜಯನೊಲೆದು ನಿಜಶಿರವ
ಆಗಲಿದು ಸುರಭವನ ವಧುಗಳು
ನಾಗರಿಗರಿವರೆತ್ತ ಭಾರತ
ಭೂಗತರು ತಾವೆತ್ತಲಿದು ಘಟಿಸಿದುದು ವಿಧಿಯಿಂದ ೪೪

ಸುರಪತಿಗೆ ಸೂಚಿಸಿದೆನೇ ಮೇಣ್
ಕರೆಸಿದೆನೆ ಕಮಲಾನನೆಯ ನೀ
ಷ್ಠುರದ ನುಡಿಗಪರಾಧವುಂಟೇ ತಾನು ಮಾಡಿದುದು
ವರುಷತನಕ ನಪುಂಸಕದಲಾ
ಚರಿಸ ಬಲ್ಲೆನೆ ಸಾಕು ದೇಹಾಂ
ತರವನಂಗೀಕರಿಸುವೆನಲಾ ತನ್ನ ನುಡಲೆಂದ ೪೫

ಎಲೆ ವಿಧಾತ್ರ ಕೃತಪರಾಧ
ಸ್ಥಳಕೆ ದಂಡ ಪ್ರಾಪ್ತಿಯಲ್ಲದೆ
ವಿಲಸಿತದ ವೇದಾರ್ಥದಲಿ ಮನ್ವಾದಿ ಮಾರ್ಗದಲಿ
ಚಲಿಸದಾಚರಿಸಿದೊಡೆ ಧರ್ಮ
ಸ್ಥಳದೊಳೇನು ನಿಮಿತ್ತವಕಟಾ
ಗಳಿತ ಪೌರುಷನಾಗಿ ಬದುಕುವನಲ್ಲ ತಾನೆಂದ ೪೬

ತಪವನಾಚರಿಸಿದೊಡೆ ವರ ಪಾ
ಶುಪತ ಶರವೆನಗಾಯ್ತು ಧರ್ಮವೆ
ತಪವಲಾ ಯೆಂದರಿದು ನಡೆದರೆ ಷಂಡತನವಾಯ್ತು
ತಪವೆರಡು ಸರಿ ಫಲದೊಳಾದುದು
ವಿಪರಿತದ ಗತಿ ಗಹನ ತರವೇ
ವಿಪುಳ ಕರ್ಮಸ್ಥಿತಿಯೆನುತ ತೂಗಿದನು ನಿಜಶಿರವ ೪೭

ಶಿವನ ಶರವೆನಗಾಯ್ತು ರಿಪು ಕೌ
ರವರ ರಕುತದ ರಾಟಳವನೆ
ತ್ತುವೆನು ಕಟ್ಟಾ ಮುಡಿಯನೆಂಬೆನು ದುರುಪದೀ ಸತಿಗೆ
ಇವಳು ಭಂಗಿಸಿ ಬೂತುಗೆಡಹಿದ
ಹವಣನಾರಿಗೆ ಹೇಳುವೆನು ವರ
ಯುವತಿಗೀ ನುಡಿಯೊಸಗೆಯೇ ಹಾಯೆನುತ ಬಿಸುಸುಯ್ದು ೪೮

ಅರಸ ಕೇಳೈ ಚಿತ್ರಸೇನನ
ಕರೆಸಿಯೂರ್ವಶಿ ಪಾರ್ಥ ಮಾಡಿದ
ದುರುಳತನವನು ದೂರಿದೊಡೆ ಸುರಸತಿಯು ಸಂತೈಸಿ
ಸುರಪತಿಗೆ ಗಂಧರ್ವನಿವರಿ
ಬ್ಬರ ನಿರೋಧ ನಿಬಂಧನವನೆ
ಚ್ಚರಿಸಲರ್ಜುನನರಮನೆಗೆ ಬಂದನು ಬಲಧ್ವಂಸಿ ೪೯

ಮಗನನಪ್ಪಿದೆನೆನ್ನ ತಂದೆಗೆ
ದುಗುಡವೇಕೆನ್ನಾನೆಗೆತ್ತಣ
ಬೆಗಡಿನ್ನರಸಂಗಿದೆತ್ತಣ ದೆಸೆಯ ದುಮ್ಮಾನ
ಮೊಗದ ತನಿ ಹಳಹಳಿಕೆ ನೇತ್ರಾಂ
ಬುಗಳೊಳದ್ದುದು ನಿಜ ಮನೋ ವೃ
ತ್ತಿಗಳೊಳಗೆ ನುಡಿ ಮುಳುಗಿತೇನಿದು ಚಿತ್ರವಾಯ್ತೆಂದ ೫೦

ನುಡಿಸೆ ತಲೆವಾಗಿದನು ಲಜ್ಜೆಯ
ಝುಡಿತೆಯಲಿ ಝೊಮ್ಮೇರಿದಂತೆವ
ಮಿಂಡುಕದಿರೆ ಮುಗುಳಪ್ಪಿ ಹರಿ ಮೊಗ ನೆಗಹಿ ಮುಂಡಾಡಿ
ಬಿಡು ಮನೋಗ್ಲಾನಿಯನು ಸತಿ ಕೆಡೆ
ನುಡಿದುದೆಲ್ಲವನೆನಗೆ ಸೈರಿಸು
ಮಡದಿಯರಲೇನುಂಟು ಗುಣವೆನ್ನಾಣೆ ಹೇಳೆಂದ ೫೧

ಎಲೆ ಕಿರೀಟಿ ವೃಥಾ ಮನೋವ್ಯಥೆ
ತಳಿತುದೇಕೂರ್ವಶಿಯ ಶಾಪದ
ಲಳುಕಿದೈ ತತ್ಕ್ರೋಧ ನಿನಗುಪಕಾರವಾಯ್ತು ಕಣ
ಹಳುವದಲಿ ಹನ್ನೆರಡು ವರುಷದ
ತಲಹಿಜ್ಞಾತದಲಿ ವರುಷವ
ಕಳೆವಡಿದು ಸಾಧನವೆಯಾಯ್ತು ಶಿಖಂಡಿತನವೆಂದ ೫೨

ಖೋಡಿಯಿಲ್ಲೆಲೆ ಮಗನೆ ಚಿಂತಿಸ
ಬೇಡ ನಿಮ್ಮಜ್ಞಾತದಲಿ ನೆರೆ
ಜೋಡಲಾ ಜಾಣಾಯ್ಲ ರಿಪುಜನ ದೃಷ್ಟಿಶರಹತಿಗೆ
ಕೂಡಿತಿದು ಪುಣ್ಯದಲಿ ಸುರಸತಿ
ಮಾಡಿದಪಕೃತಿ ನಿನ್ನ ಭಾಷೆಯ
ಬೀಡ ಸಲಹಿದುದರಿಯೆ ನೀ ಸಾಹಿತ್ಯನಲ್ಲೆಂದ ೫೩

ಎಂದು ಪಾರ್ಥನ ಸಂತವಿಟ್ಟು ಪು
ರಂದರನು ತನ್ನರಮನೆಗೆ ನಡೆ
ತಂದನರ್ಜುನ ಸಹಿತ ವಿವಿಧ ವಿನೋದ ವಿಭವದಲಿ
ಅಂದು ಶಿಖಿ ಪವನಾದಿಗಳು ನಲ
ವಿಂದ ಕೊಟ್ಟರು ಶರವನಮರೀ
ವೃಂದ ಸೂಸಿತು ಸೇಸೆಯನು ಜಯರವದ ರಭಸದಲಿ ೫೪

ಸುರಪನರುಹಿದನಸ್ತ್ರ ಶಸ್ತ್ರೋ
ತ್ತರ ರಹಸ್ಯವನವನಮರ ಭುವನದ
ಭರತ ವಿದ್ಯೆಯನರುಹಿಸಿದನಾ ಶಾಸ್ತ್ರವಿಧಿಯಿಂದ
ಸುರರಿಗಲಣಸಾದ ದೈತ್ಯರ
ನೊರಸಿದನು ತತ್ಕೀರ್ತಿಲತೆ ಕುಡಿ
ವರಿದು ಬೆಳೆದುದು ವೀರನಾರಾಯಣನ ಮೈದುನನ ೫೫

ಒಂಬತ್ತನೆಯ ಸಂಧಿ

ಸೂ. ಸಕಲ ಮುನಿಜನ ಸಹಿತ ಗಿರಿವನ
ನಿಕರದಲಿ ತೊಳಲಿದನು ರಾಜ
ನ್ಯಕ ಶಿರೋಮಣಿ ಧರ್ಮನಂದನ ತೀರ್ಥಯಾತ್ರೆಯಲಿ

ಅರಸ ಕೇಳೈ ಪಾರ್ಥನಿದ್ದನು
ವರುಷವೈದರೊಳಿಂದ್ರ ಭವನದ
ಸಿರಿಯ ಸಮ್ಮೇಳದ ಸಗಾಢದ ಸೌಮನಸ್ಯದಲಿ
ನರನ ಹವನೇನೋ ಧನಂಜಯ
ನಿರವದೆಲ್ಲಿ ಕಿರೀಟಿ ನಮ್ಮನು
ಮರೆದು ಕಳೆದನಲಾ ಯೆನುತ ಯಮಸೂನು ಚಿಂತಿಸಿದ ೧

ಕಳುಹಿದನು ಲೋಮಶನನವನೀ
ತಳಕೆ ಸುರಪತಿ ಸಿತಹಯನ ಕೌ
ಶಲವನೊಡ ಹುಟ್ಟಿದರಿಗರುಹಲಿಕಭ್ರ ಮಾರ್ಗದಲಿ
ಇಳಿದನಾ ಮುನಿಪತಿ ಧರಿತ್ರೀ
ತಳಕೆ ಕಾಮ್ಯಕನಾಮ ವನದಲಿ
ತಳಿರ ಗೂಡಾರದಲಿ ಕಂಡನು ಧರ್ಮ ನಂದನನ ೨

ಈತನಿದಿರೆದ್ದರ್ಘ್ಯ ಪಾದ್ಯವ
ನಾ ತಪೋನಿಧಿಗಿತ್ತು ಬಹಳ
ಪ್ರೀತಿಯಲಿ ಬೆಸಗೊಂಡನವರಾಗಮನ ಸಂಗತಿಯ
ಆತನಮಲ ಸ್ವರ್ಗಸದನ ಸು
ಖಾತಿಶಯವನು ತಿಳುಹಿದನು ಪುರು
ಹೂತ ಭವನದಲರ್ಜುನನ ವಾರತೆಯ ವಿವರಿಸಿದ ೩

ನುಡಿ ನುಡಿಗೆ ಸುಕ್ಷೇಮ ಕುಶಲವ
ನಡಿಗಡಿಗೆ ಬೆಸಗೊಂಡು ಪುಳಕದ
ಗುಡಿಯ ಬೀಡಿನ ರೋಮಪುಳಕದ ಪೂರ್ಣ ಹರುಷದಲಿ
ಪೊಡವಿಯಧಿಪತಿ ಬಳಿಕ ತೊಳಲಿದ
ನಡವಿಯಡವಿಯ ತೀರ್ಥಯಾತ್ರೆಗೆ
ಮಡದಿ ನಿಜ ಪರಿವಾರವವನೀದೇವ ಕುಲ ಸಹಿತ ೪

ವರ ಪುಲಸ್ತ್ಯ ಮುನೀಂದ್ರ ಭೀಷ್ಮಂ
ಗರುಹಿದುತ್ತಮ ತೀರ್ಥವನು ವಿ
ಸ್ತರಿಸಿದನು ಲೋಮಶ ಮುನೀಶ್ವರನವನಿಪಾಲಂಗೆ
ಧರಣಿಪತಿ ಬೃಹದಶ್ವನನು ಪತಿ
ಕರಿಸಿ ನಿಜ ರಾಜ್ಯಾಪಹಾರದ
ಪರಮ ದುಃಖ ಪರಂಪರೆಯನರುಹಿದನು ಖೇದದಲಿ ೫

ಆತನೀತನ ಸಂತವಿಟ್ಟು
ದ್ಯೂತದಲಿ ನಳ ಚಕ್ರವರ್ತಿ ಮ
ಹೀತಳವ ಸೋತನು ಕಡಾ ಕಲಿಯಿಂದ ಪುಷ್ಕರಗೆ
ಭೂತಳವ ಬಿಸುಟಡವಿಗೈದಿದ
ನಾತ ನಿಜವಧು ಸಹಿತ ವನದಲಿ
ಕಾತರಿಸಿ ನಿಜಸತಿಯ ಬಿಸುಟನು ಹಾಯ್ದನಡವಿಯಲಿ ೬

ಬಳಿಕ ಕಾರ್ಕೋಟಕನ ದೆಸೆಯಿಂ
ದಳಿಯೆ ನಿಜಋತುಪರ್ಣ ಭೂಪನ
ನಿಳಯಕೋಲೈಸಿದನು ಬಾಹುಕನೆಂಬ ನಾಮದಲಿ
ಲಲನೆ ತೊಳಲಿದು ಬರುತ ತಂದೆಯ
ನಿಳಯವನು ಸಾರಿದಳು ಬಳಿಕಾ
ನಳಿನಮುಖಿಯಿಂದಾಯ್ತು ನಳ ಭೂಪತಿಗೆ ನಿಜರಾಜ್ಯ ೭

ಆತನಾಪತ್ತದು ಮಹೀಪತಿ
ನೀ ತಳೋದರಿ ಸಹಿತ ನಿನ್ನೀ
ಭ್ರಾತೃಜನ ಸಹಿತೀ ಮಹಾಮುನಿ ಮುಖ್ಯ ಜನ ಸಹಿತ
ಕಾತರಿಸುತಿಹೆ ನಿನ್ನವೊಲು ವಿ
ಖ್ಯಾತರಾರೈ ಪುಣ್ಯತರರೆಂ
ದಾ ತಪೋನಿಧಿ ಸಂತವಿಟ್ಟನು ಧರ್ಮನಂದನನ ೮

ನಳ ಮಹೀಪತಿಯಶ್ವ ಹೃದಯವ
ತಿಳಿದು ಋತುಪರ್ಣನಲಿ ಕಾಲವ
ಕಳೆದು ಗೆಲಿದನು ಪುಷ್ಕಳನ ವಿದ್ಯಾತಿಮಹಿಮೆಯಲಿ
ಗೆಲಿದು ಕೌರವ ಶಕುನಿಗಳು ನಿ
ನ್ನಿಳೆಯ ಕೊಂಡರು ಮರಳಿ ಜೂಜಿಂ
ಗಳುಕಬೇಡೆಂದಕ್ಷಹೃದಯವ ಮುನಿಪ ಕರುಣಿಸಿದ ೯

ಬಳಿಕ ಲೋಮಶ ಸಹಿತ ನೃಪಕುಲ
ತಿಲಕ ಬಂದನಗಸ್ತ್ಯನಾಶ್ರಮ
ದೊಳಗೆ ಬಿಟ್ಟನು ಪಾಳೆಯವನಾ ಮುನಿಯ ಚರಿತವನು
ತಿಳುಹಿದನು ಲೋಮಶನು ವೃತ್ರನ
ಕಲಹಕೆಂದು ದಧೀಚಿ ಮುನಿಪತಿ
ಯೆಲುವನಮರರು ಬೇಡಿದುದನರುಹಿದನು ಜನಪತಿಗೆ ೧೦

ಆ ಮುನಿಯ ಕಂಕಾಳದಲಿ ಸು
ತ್ರಾಮ ಕೊಂದನು ವೃತ್ರನನು ಬಳಿ
ಕಾ ಮಹಾದಾನವರ ರಕ್ಕಸ ಕೋಟಿ ಜಲಧಿಯಲಿ
ಭೀಮ ಬಲರಡಗಿದರು ಬಂದೀ
ಭೂಮಿಯಲಿ ವಸಿಷ್ಠನಾಶ್ರಮ
ದಾ ಮುನೀಂದ್ರರ ತಿಂದರವರು ಸಹಸ್ರ ಸಂಖ್ಯೆಯಲಿ ೧೧

ಚ್ಯವನನಾಶ್ರಮದೊಳಗೆ ಮೂರನು
ತಿವಿದು ಭಾರದ್ವಾಜನಾಶ್ರಮ
ಕವರ ಮುನಿದೆಪ್ಪತ್ತ ನುಂಗಿದರೇನನುಸುರುವೆನು
ದಿವಿಜರಿತ್ತಲಗಸ್ತ್ಯನನು ಪರು
ಠವಿಸಿದರು ಸಾಗರವನಾ ಮುನಿ
ಹವಣಿಸಿದ ಜಠರದಲಿ ಕೊಂದನು ದೈತ್ಯದಾನವರ ೧೨

ಸಗರಸುತ ಚರಿತವನು ಕಪಿಲನ
ದೃಗುಶಿಖಿಯುಲುರಿದುದನು ಬಳಿಕವ
ರಿಗೆ ಭಗೀರಥನಿಳುಹಿದಮರನದೀ ಕಥಾಂತರವ
ವಿಗಡಮುನಿ ಇಲ್ವಲನ ವಾತಾ
ಪಿಗಳ ಮರ್ದಿಸಿ ವಿಂಧ್ಯಗಿರಿ ಹ
ಬ್ಬುಗೆಯ ನಿಲಿಸಿದಗಸ್ತ್ಯಚರಿತವ ಮುನಿಪ ವರ್ಣಿಸಿದ ೧೩

ಕೇಳಿದನು ನೃಪ ಋಷ್ಯಶಂಗ ವಿ
ಶಾಲ ಕಥೆಯ ಕಳಿಂಗ ದೇಶದ
ಕೂಲವತಿಗಳ ಮಿಂದು ಗಂಗಾಜಲಧಿ ಸಂಗಮದ
ಮೇಲೆ ವೈತರಣಿಯ ವರೋತ್ತರ
ಕೂಲವನು ದಾಂಟಿದನು ನೃಪಕುಲ
ಕಾಲಯಮನಾಶ್ರಮಕೆ ಬಂದರು ರೇಣುಕಾಸುತನ ೧೪

ಪರಶುರಾಮನ ಕಾರ್ತವೀರ್ಯನ
ಧುರದೊಳಿಪ್ಪತ್ತೊಂದು ಸೂಳಿನೊ
ಳರಿದರಾಯರ ಕಂಠನಾಳದ ನೆತ್ತರಿನ ನದಿಯ
ಪರಮ ಪಿತೃತರ್ಪಣವನಾತನ
ಪರಶುವಿನ ನೆಣವಸೆಯ ತೊಳಹದ
ವರನದಿಯ ವಿಸ್ತರಣವನು ಕೇಳಿದನು ಯಮಸೂನು ೧೫

ಬಂದನವನಿಪನಾ ಪ್ರಭಾಸದ
ವಂದನೆಗೆ ಬಳಿಕಲ್ಲಿ ಯಾದವ
ವೃಂದ ದರ್ಶನವಾಯ್ತು ಬಹುವಿಧ ತೀರ್ಥತೀರದಲಿ
ಮಿಂದನಾತಗೆ ಗಯನ ಚರಿತವ
ನಂದು ರೋಮಶ ಹೇಳಿದನು ನಲ
ವಿಂದ ಸಂಯಾತಿ ಚ್ಯವನ ಸಂವಾದ ಸಂಗತಿಯ ೧೬

ಚವನ ಮುನಿಯ ವಿವಾಹವನು ರೂ
ಪವನು ಮುನಿಗಶ್ವಿನಿಗಳಿತ್ತುದ
ನವರಿಗಾ ಮುನಿ ಮುಖ ಹವಿರ್ಭಾಗ ಪ್ರಸಂಗತಿಯ
ಅವರಿಗಿಂದ್ರನ ಮತ್ಸರದ ದಾ
ನವನ ನಿರ್ಮಾಣವನು ಬಳಿಕಿನೊ
ಳವನಿಪಗೆ ಮಾಂಧಾತ ಚರಿತವನೊರೆದನಾ ಮುನಿಪ ೧೭

ಸೋಮಕನ ಚರಿತವ ಮರುತ್ತ ಮ
ಹಾ ಮಹಿಮನಾಚಾರ ಧರ್ಮ
ಸ್ತೋಮವನು ವಿರಚಿಸಿ ಯಯಾತಿಯ ಸತ್ಕಥಾಂತರವ
ಭೂಮಿಪತಿ ಕೇಳಿದನು ಶಿಬಿಯು
ದ್ದಾಮತನವನು ತನ್ನ ಮಾಂಸವ
ನಾ ಮಹೇಂದ್ರಾಗ್ನಿಗಳಿಗಿತ್ತ ವಿಚಿತ್ರ ವಿಸ್ತರವ ೧೮

ಕೇಳಲಷ್ಟಾವಕ್ರ ಚರಿತವ
ಹೇಳಿದನು ರೋಮಶ ಮುನೀಂದ್ರ ನೃ
ಪಾಲಕಂಗರುಹಿದನು ಯಾವತ್ ಋಷಿಯ ಸತ್ಕಥೆಯ
ಬಾಳಡವಿ ಬಯಲಾಯ್ತು ಫಲ ಮೃಗ
ಜಾಲ ಸವೆದುದು ಗಂಧಮಾದನ
ಶೈಲ ವನದಲಿ ವಾಸವೆಂದವನೀಶ ಹೊರವಂಟ ೧೯

ಅರಸ ಬಂದನು ಗಂಧಮಾದನ
ಗಿರಿಯತಪ್ಪಲಿಗಗ್ನಿ ಹೋತ್ರದ
ಪರಮ ಋಷಿಗಳು ಮಡದಿ ಸಕಲ ನಿಯೋಗಿಜನ ಸಹಿತ
ಸರಸಿ ನೆರೆಯವು ಸ್ನಾನ ಪಾನಕೆ
ತರು ಲತಾವಳಿಗಳು ಯುಧಿಷ್ಠಿರ
ನರಮನೆಯ ಸೀವಟಕೆ ಸಾಲವು ನೃಪತಿ ಕೇಳೆಂದ ೨೦

ಮರುದಿವಸವಲ್ಲಿಂದ ಬೆಟ್ಟದ
ಹೊರೆಗೆ ನಡೆತರಲಭ್ರದಲಿ ಗುಡಿ
ಯಿರಿದು ಮೆರೆದುದು ಮೇಘ ಮಿಂಚಿದುದಖಿಳ ದೆಸೆದೆಸೆಗೆ
ಬರಸಿಡಿಲ ಬೊಬ್ಬೆಯಲಿ ಪರ್ವತ
ಬಿರಿಯೆ ಬಲುಗತ್ತಲೆಯ ಬಿಂಕಕೆ
ನರರ ಕಣುಮನ ಹೂಳಿ ತೂಳಿತು ಮಳೆ ಮಹೀತಳವ ೨೧

ಮರನ ಮರ ತಕ್ಕೈಸಿದವು ಕುಲ
ಗಿರಿಯ ಗಿರಿ ಮುಂಡಾಡಿದವು ತೆರೆ
ತೆರೆಗಳಲಿ ಗಂಟಿಕ್ಕಿದವು ಸಾಗರದ ಸಾಗರದ
ಧರಣಿಗಿಕ್ಕಿದಿಳಿಂಪನಡಕಿಲು
ಜರಿಯದಿಹುದೇ ಜಗದ ಬೋನಕೆ
ಹರಿಗೆ ಹೇಳಿನೆ ಬೀಸಿದುದು ಬಿರುಗಾಳಿ ಬಿರುಸಿನಲಿ ೨೨

ಕೆದರಿತಲ್ಲಿಯದಲ್ಲಿ ಮಳೆಯಲಿ
ಹುದುಗಿತಲ್ಲಿಯದಲ್ಲಿ ಕಣೆಗಿಲು
ಕದಳಿಗಳ ಮರೆಗೊಂಡುದಲ್ಲಿಯದಲ್ಲಿ ಹರಿಹರಿದು
ಬೆದರಿತಲ್ಲಿಯದಲ್ಲಿ ಕರಕರ
ದೊದರಿತಲ್ಲಿಯದಲ್ಲಿ ಬಲುವಳೆ
ಸದೆದುದಿವರನು ಸೇಡುಗೊಂಡುದು ಜನದ ಸುಮ್ಮಾನ ೨೩

ಬಗಿದು ಹೊಕ್ಕರು ಮೆಳೆಗಳನು ಮಿಂ
ಚುಗಳ ಕಂಬೆಳಗಿನಲಿ ದಾರಿಯ
ತೆಗೆ ತೆಗೆದು ಸಾರಿದರು ಸಂದಣಿ ಮರನ ಹೆಮ್ಮರನ
ಬಿಗಿದ ರೋಮದ ಹುದಿದ ಕೈಗೊ
ಪ್ಪೆಗಳ ನಡುಕದ ಮೈಯ ಕಡು ಸೇ
ಡುಗಳ ಶೀತದ ಸಕಲಜನ ಹುದುಗಿದುದರಣ್ಯದಲಿ ೨೪

ಹೊಳೆವ ಕಂಗಳ ಕಾಂತಿ ಬಲುಗ
ತ್ತಲೆಯ ಝಳಪಿಸೆ ಘೋರ ವಿಪಿನದೊ
ಳಳಿಕುಲಾಳಕಿ ಬಂದಳೊಬ್ಬಳೆ ಮಳೆಗೆ ಕೈಯೊಡ್ಡಿ
ಬಲಿದು ಮೈ ನಡನಡುಗಿ ಹಲು ಹಲು
ಹಳಚಿ ನೆನೆದಳು ವಾರಿಯಲಿ ತನು
ಹಳಹಳಿಸೆ ಬಳಲಿದಳು ಚರಣದ ಹೊನಲ ಹೋರಟೆಗೆ ೨೫

ಎಡಹು ಬೆರಳಿನ ಕಾಲ ಮುಳುಗಳ
ಕಡುವಳೆಯ ಘಾಟಳಿಪ ಗಾಳಿಯ
ಸಿಡಿಲು ಮಿಂಚಿನ ಗಲ್ಲಣೆಯ ಘೋರಾಂಧಕಾರದಲಿ
ಒಡನೆ ಮಾನಿಸರಿಲ್ಲ ಕರೆದೊಡೆ
ನುಡಿವರಿಲ್ಲ ಕರದ್ವಯದಿ ತಡ
ವಿಡುತ ಪೈಸರದೊಳಗೆ ಸೂಸಿತು ಮೈ ಮಹಾಸತಿಯ ೨೬

ಗಾಳಿಗೊರಗಿದ ಕದಳಿಯಂತಿರೆ
ಲೋಲಲೋಚನೆ ಥಟ್ಟುಗೆಡೆದಳು
ಮೇಲುಸುರ ಭಲುಮೂರ್ಛೆಯಲಿ ಮುದ್ರಿಸಿದ ಚೇತನದ
ಬಾಲೆಯಿರೆ ಬೆಳಗಾಯ್ತು ತೆಗೆದುದು
ಗಾಳಿ ಬಿರುವಳೆ ಭೀಮ ನಕುಲ ನೃ
ಪಾಲರರಸಿದರೀಕೆಯನು ಕಂಡವರ ಬೆಸಗೊಳುತ ೨೭

ಬರುತ ಕಂಡರು ಬಟ್ಟೆಯಲಿ ನಿ
ರ್ಭರದ ಮೂರ್ಛಾ ಮೋಹಿತಾಂತಃ
ಕರಣೆಯನು ಹಾಯೆನುತ ಬಿದ್ದರು ಪವನಜಾದಿಗಳು
ಧರಣಿಪತಿ ತೆಗೆದೀಕೆಯನು ಕು
ಳ್ಳಿರಿಸಿ ತನ್ನಯ ತೊಡೆಯ ಮೇಲಾ
ದರಿಸಿ ಮಂತ್ರಿಸಿ ನೀರ ತಳಿದನು ರಕ್ಷೆಗಳ ರಚಿಸಿ ೨೮

ಉಪಚರಿಸಿ ರಕ್ಷೋಘ್ನ ಸೂಕ್ತದ
ಜಪವ ಮಾಡಿಸಿ ವಚನ ಮಾತ್ರದ
ರಪಣದಲಿ ರಚಿಸಿದನು ಗೋಧನ ಭೂಮಿ ದಾನವನು
ನೃಪತಿ ಕೇಳೊಂದೆರಡು ಗಳಿಗೆಯೊ
ಳುಪಹರಿಸಿದುದು ಮೂರ್ಛೆ ಸತ್ಯ
ವ್ಯಪಗತೈಶ್ವರ್ಯರನು ಕಂಡಳು ಕಾಂತೆ ಕಣ್ದೆರೆದು ೨೯

ನೆಲೆವನೆಯ ಮಾಡದಲಿ ರತ್ನಾ
ವಳಿಯ ನುಣ್ಬೆಳಗಿನಲಿ ಹಂಸೆಯ
ತುಳಿಯ ಮೇಲ್ವಾಸಿನಲಿ ಪವಡಿಸುವೀಕೆಗಿಂದೀಗ
ಹಳುವದಲಿ ಘೋರಾಂಧಕಾರದ
ಮಳೆಯೊಳೊಬ್ಬಳೆ ನಡೆದು ನೆನೆದೀ
ಕಲುನೆಲದೊಳೊರಗಿದಳೆನುತ ಮರುಗಿದನು ಧರಣೀಶ ೩೦

ಹರೆದುದುಬ್ಬಿದ ಮೂರ್ಛೆ ಕರಣೋ
ತ್ಕರದ ಕಳವಳವಡಗಿತರಸನ
ನರಸಿ ಸಂತೈಸಿದಳು ತಪ್ಪೇನಿದು ಪುರಾಕೃತದ
ಪರುಠವಣೆಗೇಕಳಲು ಮುಂದಣ
ಗಿರಿಯ ಗಮನೋಪಾಯವನು ಗೋ
ಚರಿಸಿರೇ ಸಾಕೆಂದಳಂಬುಜಮುಖಿ ಮಹೀಪತಿಗೆ ೩೧

ಇದೆ ಮುನಿವ್ರಜವಗ್ನಿ ಹೋತ್ರಿಗ
ಳಿದೆ ಕುಟುಂಬಿಗಳಾಪ್ತ ಪರಿಜನ
ವಿದೆ ವರ ಸ್ತ್ರೀಬಾಲವೃದ್ಧ ನಿಯೋಗಿಜನ ಸಹಿತ
ಇದೆ ಮಹಾಕಾಂತಾರವಿನಿಬರ
ಪದಕೆ ವನ ಮಾರ್ಗದಲಿ ಸೇರುವ
ಹದನ ಕಾಣೆನು ಶಿವ ಶಿವೆಂದಳು ಕಾಂತೆ ಭೂಪತಿಗೆ ೩೨

ಆಯತಾಕ್ಷಿಯ ನುಡಿಗೆ ಪಾಂಡವ
ರಾಯ ಮೆಚ್ಚಿದನಿನ್ನು ಗಮನೋ
ಪಾಯವೆಂತೆಂದೆನುತ ಚಿಂತಿಸಿದನು ಘಟೋತ್ಕಚನ
ರಾಯ ಕೇಳ್ಬೆ ಕಮಲನಾಭನ
ಮಾಯೆಯೋ ನಾವರಿಯೆವಾಕ್ಷಣ
ವಾಯು ವೇಗದಲಭ್ರದಿಂದಿಳಿತಂದನಮರಾರಿ ೩೩

ವೀರ ದೈತ್ಯನ ಬಹಳ ದುಷ್ಪರಿ
ವಾರವದನಾರೆಣಿಸುವರು ಮುಂ
ಗಾರಿರುಳ ತನಿಯರಕ ನೀಲಾಚಲದ ಖಂಡರಣೆ
ಘೋರ ರಾಹುವ್ಯೂಹವೆನೆ ಸುರ
ವೈರಿಗಳ ಮೈಗಾಂತಿ ಲಹರಿಯ
ಪೂರದಲಿ ಜಗ ಮುಳುಗೆ ಬಂದುದು ಲಕ್ಷಸಂಖ್ಯೆಯಲಿ ೩೪

ದೇವ ಬೆಸಸಾ ನಮ್ಮ ಬರಿಸಿದು
ದಾವ ಹದನು ನವೀನ ಭಟರಿದೆ
ದೇವರಿಪುಗಳು ಹೇಳು ನೆನಹಿನ ರಾಜಕಾರಿಯವ
ಆವುದೆನಗುದ್ಯೋಗವೆನೆ ಸಂ
ಭಾವಿಸಿದನಸುರನನು ಜಾರುವ
ಜೀವಮರುತನ ಮರಳಿ ನಿಲಿಸಿತು ನಿನ್ನ ನುಡಿಯೆಂದ ೩೫

ದುರ್ಗವಿದೆ ನಮ್ಮಂಘ್ರಿ ಶಕ್ತಿಯ
ನುಗ್ಗಿ ಬೀತುದು ಸಾಹಸಿಗ ನೀ
ನಗ್ಗಳಿಯರಿದೆ ನಿನ್ನವರು ಪಡಿಗಿರಿಗಳಾ ಗಿರಿಗೆ
ಹುಗ್ಗಿಗರ ಹೆಗಲೇರಿಸೊಂದೇ
ಲಗ್ಗೆಯಲಿ ನಡೆಸೆನೆ ಹಸಾದದ
ಮೊಗ್ಗೆಗೈಗಳ ದನುಜ ತಗ್ಗಿದನರಸನಿದಿರಿನಲಿ ೩೬

ಹೊತ್ತನರಸನನರಸನನುಜರ
ನೆತ್ತಿದನು ನೃಪನರಸಿಯನು ಬಳಿ
ಕೆತ್ತಿ ಕೈವೀಸಿದನು ಭಟರಿಗೆ ತೋರಿ ಪರಿಜನವ
ಹೊತ್ತರನಿಬರನಸುರ ಭಟರೊ
ತ್ತೊತ್ತೆಯಾದುದು ಬೆನ್ನಿನಲಿ ಬಿಗಿ
ದೆತ್ತಿ ಹಾಯ್ದರು ಮುಗಿಲ ಥಟ್ಟಿನ ಪರಿಯ ಜೋಡಿನಲಿ ೩೭

ಅಸುರ ದೇಹ ಸ್ಪರ್ಶವಸಮಂ
ಜಸವಲಾ ತನಗೆನುತ ಮುನಿ ರೋ
ಮಶನು ಗಗನೇಚರರ ಗತಿಯಲಿ ಬಂದನಿವರೊಡನೆ
ವಿಷಮ ಗಿರಿ ಕಾನನ ಕದಧ್ವ
ಪ್ರಸರವನು ಹಿಂದಿಕ್ಕಿ ಹೊದ್ದಿದ
ರೆಸೆವ ನರನಾರಾಯಣಾಶ್ರಮ ವರತಪೋವನವ ೩೮

ಅಲ್ಲಿಯಖಿಳ ಋಷಿವ್ರಜವು ಭೂ
ವಲ್ಲಭನನಾತಿಥ್ಯ ಪೂಜಾ
ಸಲ್ಲಲಿತ ಸಂಭಾವನಾ ಮಧುರೋಕ್ತಿ ರಚನೆಯಲಿ
ಅಲ್ಲಿಗಲ್ಲಿಗೆ ಸಕಲ ಮುನಿ ಜನ
ವೆಲ್ಲವನು ಮನ್ನಿಸಿದನಾ ವನ
ದಲ್ಲಿ ನೂಕಿದನೆಂಟು ದಿನವನು ನೃಪತಿ ಕೇಳೆಂದ ೩೯

ಹತ್ತನೆಯ ಸಂಧಿ

ಸೂ. ಕಂಡನಡವಿಯೊಳನಿಲಜನನಾ
ಖಂಡಲನ ತನುಜನ ಪತಾಕಾ
ದಂಡದಲಿ ನಿಲುವಂತೆ ವರವನು ಪಡೆದನಾ ಭೀಮ

ಕೇಳು ಜನಮೇಜಯ ಧರಿತ್ರೀ
ಪಾಲ ನರ ನಾರಾಯಣಾಶ್ರಮ
ಕೂಲವತಿಗಳ ನಂದನದ ನಿರ್ಮಳ ಸರೋವರದ
ಕೇಳಿಕೆಯ ನವಿಲುಗಳ ತುಂಬಿಯ
ಮೇಳವದ ಗೀತದ ವಿನೋದದ
ಲಾಳಿದರು ವನವಾಸ ಸಾಮ್ರಾಜ್ಯವನು ಸೊಗಸಿನಲಿ ೧

ಪರಮ ಧರ್ಮಶ್ರವಣ ಸೌಖ್ಯದೊ
ಳರಸನಿರೆ ಬದರಿಯಲಿ ಪೂರ್ವೋ
ತ್ತರದ ದೆಸೆವಿಡಿದೆಸಗಿತತಿಶಯ ಗಂಧ ಬಂಧುರದ
ಭರಣಿ ಮನ್ಮಥ ಪೋತ ವಣಿಜನ
ತರಣಿ ತರುಣ ಭ್ರಮರ ಸೇವಾ
ಸರಣಿಯೆನೆ ಸುಳಿದುದು ಸಮೀರಣನಾ ಮಹಾದ್ರಿಯಲಿ ೨

ಸರಸ ಸೌಗಂಧಿಕದ ಪರಿಮಳ
ಭರದ ಭಾರವಣೆಯಲಿ ತಿಳಿಗೊಳ
ನುರುಬುದೆರೆಗಳ ತಿವಿಗುಳಿನ ತುಂತುರು ತುಷಾರದಲಿ
ಮೊರೆದೊಗುವ ಮರಿದುಂಬಿಗಳ ಮೋ
ಹರದ ಮೋಡಾಮೋಡಿಯಲಿ ಡಾ
ವರಿಸಿತೈದಿಂದ್ರಿಯದಲೊಂದಿರೆ ಸಕಲ ಮುನಿಜನವ ೩

ಮೇಲುರತದಲಿ ಪರಿಮಳದ ವೈ
ಹಾಳಿಯಲಿ ಸಲೆ ಬೀದಿವರಿದು ಚ
ಡಾಳಿಸುವ ಸೊಗಸಿನಲಿ ಸೊಂಪಾದಳು ಸರೋಜಮುಖಿ
ಸೋಲಿಸಿತಲಾ ಚೂಣಿಯಲಿ ಸಂ
ಪಾಳಿಸಿದ ಸೌಗಂಧವಿನ್ನು ವಿ
ಶಾಲ ಪದುಮವದೆಂತುಟೆನುತವೆ ತೂಗಿದಳು ಶಿರವ ೪

ಅರಸನಲಿ ಮೇಣ್ ನಕುಲ ಸಹದೇ
ವರಲಿ ತನ್ನ ಮನೋರಥಕೆ ವಿ
ಸ್ತರಣವಾಗದು ನುಡಿವಡಿಲ್ಲರ್ಜುನ ಸಮೀಪದಲಿ
ಅರಿಭಯಂಕರ ಭೀಮನೇ ಗೋ
ಚರಿಸುವನಲಾಯೆನುತಲಾತನ
ಹೊರೆಗೆ ಬಂದಳು ನಗುತ ನುಡಿದಳು ಮಧುರ ವಚನದಲಿ ೫

ಓರಿದು ಸೊಗಸಾಯ್ತೆನಗೆ ಪೂರ್ವದ
ಪರಿಮಳದ ಕೇಳಿಯಲಿ ನೀನಾ
ಸರಸಿಜವ ತಂದಿತ್ತು ತನ್ನ ಮನೋರಥ ವ್ಯಥೆಯ
ಪರಿಹರಿಪುದೆನಲಬುಜವದನೆಯ
ಕುರುಳನುಗುರಲಿ ತಿದ್ದಿದನು ತ
ತ್ಸರಸಿಜವ ತಹೆನೆನುತ ಕೊಂಡನು ನಿಜ ಗದಾಯುಧವ ೬

ಬಿಗಿದು ಬತ್ತಳಿಕೆಯನು ಹೊನ್ನಾ
ಯುಗದ ಖಡ್ಗ ಶರಾಸನವ ಕೊಂ
ಡಗಧರನ ನೆನೆದನಿಲಸುತ ಹೊರವಂಟನಾಶ್ರಮವ
ಬಗಿದು ಹೊಕ್ಕನರಣ್ಯವನು ಬೊ
ಬ್ಬೆಗಳ ಬಿರುಬಿನ ಬಾಹುಸತ್ವದ
ವಿಗಡ ಭೀಮನ ಕಾಲುದುಳಿ ಕಂಪಿಸಿತು ಕಾನನವ ೭

ಒದರಿದರೆ ಪರ್ವತದ ಶಿಖರದ
ಲುದುರಿದವು ಹೆಗ್ಗುಂಡುಗಳು ಮುರಿ
ದಿದೊದೆಯೆ ಬಿದ್ದವು ಬೇರು ಸಹಿತ ಮಹಾದ್ರುಮಾಳಿಗಳು
ಗದೆಯ ಹೊಯ್ಲಿನ ಗಂಡ ಶೈಲವೊ
ಕದಳಿಗಳೊ ತಾವರಿಯೆವುಬ್ಬಿದ
ಮದಮುಖನ ಪರಿಮಸಕ ಮುರಿದುದು ಗಿರಿತರುವ್ರಜವ ೮

ಮುಡುಹು ಸೋಂಕಿದೊಡಾ ಮದಾದ್ರಿಗ
ಳೊಡನೆ ತೋರಹತರು ಕೆಡೆದುವಡಿ
ಯಿಡಲು ಹೆಜ್ಜೆಗೆ ತಗ್ಗಿದುದು ನೆಲ ಸಹಿತ ಹೆದ್ದೆವರು
ಒಡೆದುದಿಳೆ ಬೊಬ್ಬಿರಿತಕೀತನ
ತೊಡೆಯ ಗಾಳಿಗೆ ಹಾರಿದವು ಕಿರು
ಗಿಡ ಮರಂಗಳು ಮೀರಿ ನಡೆದನು ಭೀಮನಡವಿಯಲಿ ೯

ಹುಲಿ ಕರಡಿ ಕಾಡಾನೆ ಸಿಂಹಾ
ವಳಿಗಳೀತನ ದನಿಗೆ ಯೋಜನ
ವಳೆಯದಲಿ ಹಾಯ್ದೋಡಿದವು ನೋಡುತ್ತ ಮುರಿಮುರಿದು
ಹಳುವ ತಳಪಟವಾಯ್ತು ದಿಗ್ಗಜ
ತುಳಿದ ಬಾಳೆಯ ವನದವೊಲು ವೆ
ಗ್ಗಳೆಯೆನ್ನೈ ಕಲಿಭೀಮ ಬಂದನು ವನದ ಮಧ್ಯದಲಿ ೧೦

ಬಿರಿದವದ್ರಿಗಳನಿಲಸುತನು
ಬ್ಬರದ ಬೊಬ್ಬೆಗೆ ಮಿಕ್ಕ ಮೃಗತತಿ
ಶರಭ ಶಾರ್ದೂಲಂಗಳಿಲ್ಲ ವಿಲೋಚನಾಂತದಲಿ
ಮರ ಗಿರದ ಮೃಗ ಗಿಗದ ಮಾತೇ
ನರಸ ಭೀಮನ ದನಿಗೆ ಬೆಚ್ಚದೆ
ಗಿರಿ ಗುಹೆಗಳೇ ಮಲೆತು ನಿಂದವುವನಿಗೆ ದನಿಗೊಡುತ ೧೧

ಆ ಮಹಾದ್ರಿಯ ತಪ್ಪಲಲಿ ನಿ
ಸ್ಸೀಮ ಕದಳೀಷಂಡದಲಿ ರಘು
ರಾಮನಾಮ ಸುಧಾಭಿಷೇಕ ಸಮಗ್ರ ಸೌಖ್ಯದಲಿ
ಭೀಮ ವಿಕ್ರಮನಿದ್ದನೀಯುಂ
ದ್ದಾಮ ಸಿಂಹಧ್ವನಿಗೆ ನಿದ್ರಾ
ತಾಮಸವ ತನಿಮದವಡಗೆ ಕಂದೆರೆದನಾ ಹನುಮ ೧೨

ಏನಿದೆತ್ತಣ ರಭಸವೀ ಗಿರಿ
ಸಾನುವಿದಮಾನುಷ ವಿಹಾರ
ಸ್ಥಾನವಿವನಾರೋ ಮಹಾದೇವಾ ಪ್ರಚಂಡನಲು
ಈ ನಿನದವೆಮ್ಮಂದಿನಗ್ಗದ
ವಾನರ ಗರ್ಜನೆಗೆ ಗುರುವಾ
ಯ್ತೇನನಂಬೆನೆನುತ್ತ ಮೆಲ್ಲನೆ ಮಿಡುಕಿದನು ಹನುಮ ೧೩

ಮುರಿಯದಂತಿರೆ ಲಘುವಿನಲಿ ಹೆ
ಮ್ಮರನನೊಯ್ಯನೆ ನೆಮ್ಮಿ ಕುಳ್ಳಿ
ರ್ದರಿ ದಿಶಾಪಟ ನುಡಿಸಿದನು ಪವಮಾನನಂದನನ
ಭರವಿದೆಲ್ಲಿಗೆ ಮರ್ತ್ಯನೋ ಖೇ
ಚರನೋ ದೈತ್ಯನೋ ದಿವಿಜನೋ ಕಿ
ನ್ನರನೊ ನೀನಾರೆಂದು ಭೀಮನ ನುಡಿಸಿದನು ಹನುಮ ೧೪

ನಾವು ಮರ್ತ್ಯರು ದೂರದಲಿ ರಾ
ಜೀವಗಂಧ ಸಮೀರಣನ ಸಂ
ಭಾವನೆಗೆ ಸೊಗಸಿದಳು ಸತಿಯಾಕೆಯ ವಚಸ್ಸಿನಲಿ
ತಾವರೆಯ ತಹೆನೆನುತ ಸಿಂಹ ವಿ
ರಾವದಲಿ ವಿಕ್ರಮಿಸೆ ವಿಗಡನ
ದಾವರಿಸಿ ಬಲುಬಾಲ ತಡೆದುದು ಪವನಜನ ಪಥವ ೧೫

ಗದೆಯ ಮೊನೆಯಲಿ ನೂಕಿದನು ರೋ
ಮದಲಿ ಚಲಿಸದು ಬಾಲ ನೋಡಿದ
ನಿದು ವಿಚಿತ್ರವಲಾಯೆನುತ ನುಡಿಸಿದನು ಕಪಿವರನ
ಒದೆದಡದ್ರಿಗಳಳಿವವೆನ್ನಂ
ಗದಲಿ ನಾ ಬಲ್ಲಿದನು ಬಾಲದ
ಕದವ ತೆಗೆ ಬಟ್ಟೆಯಲೆನುತ ಗರ್ಜಿಸಿದನಾ ಭೀಮ ೧೬

ನೀವು ಬಲ್ಲಿದರಿದಕೆ ಸಂಶಯ
ವಾವುದಲ್ಲದೊಡೀ ಮದ ದ್ವಿಪ
ವೀ ವಿಹಗಕುಲವೀ ಮೃಗವ್ರಜವಂಜುವವೆ ನಿಮಗೆ
ನಾವು ವೃದ್ಧರು ನಮ್ಮ ಬಾಲವ
ನಾವು ಹದುಳಿಸಲಾರೆವೀಗಳು
ನೀವು ತೊಲಗಿಸಿ ಬಿಜಯ ಮಾಡುವುದೆಂದನಾ ಹನುಮ ೧೭

ಐಸಲೇ ತಪ್ಪೇನೆನುತ ತನ
ಗೇಸು ಬಲವುಂಟೈಸರಲಿ ಕ
ಟ್ಟಾಸುರದಲೌಂಕಿದನು ಬಾಲವನೊದರಿ ಬೊಬ್ಬಿಡುತ
ಗಾಸಿಯಾದನು ಪವನ ಸುತನೆ
ಳ್ಳೆಸು ಮಿಡುಕದು ಬಾಲ ಊರ್ಧ್ವ
ಶ್ವಾಸ ಲಹರಿಯಲಡಿಗಡಿಗೆ ಲಟಕಟಿಸಿದನು ಭೀಮ ೧೮

ತೆಗೆದು ಸೈರಿಸಿ ನಿಂದು ಹೊಯ್ಸು
ಳ್ಳೆಗಳು ಡಾವರವಡಗಲೊಳ ತಾ
ಳಿಗೆಗೆ ಕಳವಳ ನೂಕಿದನು ಕರ್ಪೂರದ ಹಳುಕುಗಳ
ಧಗೆಯಡಗೆ ಮರುವಲಗೆ ಗೌಡೊ
ತ್ತುಗಳ ಬಲಿದವಯವದ ಸತ್ರಾ
ಣೆಗಳ ದೇವನು ತಾವುರಿಯಲೊದಗಿದನು ಬಾಲದಲಿ ೧೯

ಮಿಡುಕದದು ಮಹಿಯಿಂದ ಭೀಮನ
ಕಡುಹು ನಿಂದುದು ಬಾಲದಲಿ ತುದಿ
ನಡುಗದನಿಲಜನಂಗವಟ್ಟದ ಕಡುಹು ಕಂಪಿಸದು
ತೊಡಕೆ ಕೆಟ್ಟುದು ಕಾರ್ಯ ದುರ್ಬಲ
ನೊಡನೆ ಭಂಗವ್ಯಾಪ್ತಿ ತನ್ನನು
ಸುಡಲೆನುತ ಹಿಮ್ಮೆಟ್ಟಿ ಮಮ್ಮಲ ಮರುಗಿದನು ಭೀಮ ೨೦

ಈತ ಕಪಿರೂಪದ ಸುರೇಂದ್ರನೊ
ಭೂತನಾಥನೊ ವೇಣು ವಿಮಳ
ತ್ರೇತೆಯಲಿ ದಶಮುಖನ ಹಾಣಾಹಾಣಿಗಳ ಕಪಿಯೊ
ಏತರವು ನಮ್ಮುಬ್ಬಟೆಗಳಿಂ
ದೀತ ಗೆಲಿದನು ಬಾಲದಲಿ ಸ..
ತ್ವಾತಿಶಯವಿನ್ನಿವನೊಳೆಂತುಟೊ ಶಿವಶಿವಾಯೆಂದ ೨೧

ಭೀಮ ಗದೆ ತಾನೌಕಿ ನಿಲಲು
ದ್ದಾಮ ಬಾಲದ ನಿದ್ರೆ ತಿಳಿಯದು
ರೋಮತತಿ ಮುಸೆಗಾಣಿಸಿದವೆನುತುತ್ತಮಾಂಗದಲಿ
ಈ ಮನುಷ್ಯ ಶರೀರವಪಜಯ
ಧಾಮವಲ್ಲಾ ಶಿವ ಶಿವಾ ನಿ
ಸ್ಸೀಮ ಕಪಿ ನೀನಾರೆನುತ ಪವಜನ ಬೆಸಗೊಂಡ ೨೨

ನಾವು ವಾನರರಡವಿಯಲಿ ಫಲ
ಜೀವಿಗಳು ನಿಸ್ಸತ್ವರಿಲ್ಲಿಯ
ಠಾವ ಬಿಡಲನ್ಯತ್ರ ಗಮನತ್ರಾಣವಿಲ್ಲೆಮಗೆ
ನೀವು ದಿಟವಾರೈ ಮಹಾ ಸಂ
ಭಾವಿತರು ಸುರ ನರ ಭುಜಂಗರೊ
ಳಾವ ಕುಲ ನಿಮಗೆಂದು ಭೀಮನ ನುಡಿಸಿದನು ಹನುಮ ೨೩

ಮನುಜರಾವ್ ಸೋಮಾಭಿಕುಲದಲಿ
ಜನಿಸಿದನು ವರ ಪಾಂಡುವಾತನ
ತನುಜರಾವು ಯುಧಿಷ್ಠಿರಾರ್ಜುನ ಭೀಮ ಯಮಳರೆನೆ
ವನಕೆ ಬಂದೆವು ನಮ್ಮ ದಾಯಾ
ದ್ಯನ ವಿಕಾರ ದ್ಯೂತ ಕೇಳೀ
ಜನದ ಕಿಲ್ಬಿಷದಿಂದ ರಾಜ್ಯಭ್ರಂಶವಾಯ್ತೆಂದ ೨೪

ಬಳಿಕ ಸೌಗಂಧಿಕದ ಪವನನ
ಬಳಿವಿಡಿದು ನಾ ಬಂದೆನೆಮ್ಮಯ
ಲಲನೆ ಕಾಮಿಸಿದಳು ಸಹಸ್ರದಳಾಬ್ಜ ದರುಶನವ
ತಿಳಿಯಲಿದು ವೃತ್ತಾಂತ ನೀನ
ಸ್ಖಲಿತ ಬಲ ನೀನಾರು ತನ್ನನು
ತಿಳುಹ ಹೇಳು ಮಹಾತ್ಮ ಕಪಿ ನೀನೆನುತ ಕೈಮುಗಿದ ೨೫

ನಾವು ಹಿಂದಣ ಯುಗದರಾಘವ
ದೇವನೋಲೆಯಕಾರರಾ ಸು
ಗ್ರೀವ ಸಖ್ಯರು ಪವನನಿಂದಂಜನೆಗೆ ಜನಿಸಿದೆವು
ನಾವು ನಿಮ್ಮೊಡ ಹುಟ್ಟಿದರು ಸಂ
ಭಾವಿಸಿತು ನಿಮ್ಮಿಷ್ಟವೆನೆ ನಗು
ತಾ ವೃಕೋದರನೆರಗಿದನು ಕಲಿ ಹನುಮನಂಘ್ರಿಯಲಿ ೨೬

ಜರುಗಿನಲಿ ಜಾಂಬೂನದದ ಸಂ
ವರಣೆಕಾರಂಗೆಡೆಯಲಿದ್ದುದು
ಪರಮನಿಧಿ ಮಝು ಪೂತು ಪುಣ್ಯೋದಯದ ಫಲವೆನುತ
ಸರಸಿಯೆತ್ತಲು ಗಂಧವೆತ್ತಲು
ಬರವಿದೆತ್ತಣಿದೆತ್ತ ಘಟಿಸಿದು
ದರರೆ ಮಾರುತಿ ತಂದೆ ನೀನೆಂದೆನುತ ಬಣ್ಣಿಸಿದ ೨೭

ತೀದುದೆಮಗೆ ವನ ಪ್ರವಾಸದ
ಖೇದವರ್ಜುನನಗಲಿಕೆಯ ದುಂ
ರ್ಭೇದ ವಿಷವಿಂದಿಳಿದುದ್ಯೆ ಶಿವಶಿವ ಮಹಾದೇವ
ಹೋದ ರಾಜ್ಯಭ್ರಂಶ ಬಹಳ ವಿ
ಷಾದ ಬೀತುದು ನಿಮ್ಮ ಕಾರು
ಣ್ಯೋದಯವುಯಮಗಾಯ್ತಲಾ ಚರಿತಾರ್ಥರಾವೆಂದ ೨೮

ಹಿರಿಯರೆನಗಿಬ್ಬರು ಯುಧಿಷ್ಠಿರ
ಧರಣಿಪತಿ ನೀನೊಬ್ಬನಯ್ಯಂ
ದಿರುಗಳಿಬ್ಬರು ಮಾರುತನು ನೀನೊಬ್ಬನಿಂದೆನಗೆ
ಗುರುಗಳಿಬ್ಬರು ಬಾದರಾಯಣ
ಪರಮ ಋಷಿ ನೀನೊಬ್ಬನೆಂದುಪ
ಚರಿಸಿದನು ಪವಮಾನ ನಂದನನಂಜನಾ ಸುತನ ೨೯

ಲಲಿತ ವಚನಕೆ ನಿನ್ನ ಭುಜದ
ಗ್ಗಳಿಕೆಗಾ ಮೆಚ್ಚಿದೆನು ಹಿಮಕರ
ಕುಲ ಪವಿತ್ರರು ಜನಿಸಿದಿರಲಾ ಪಾಂಡು ಜಠರದಲಿ
ಗೆಲವು ನಿಮಗಹಿತರಲಿ ಪಾರ್ಥನ
ಕೆಲವು ದಿವಸಕೆ ಕಾಂಬಿರೆಮಗೆಯು
ಫಲಿಸಿತೀ ದಿನಕೆಂದು ಕೊಂಡಾಡಿದನು ಹನುಮಂತ ೩೦

ಅಂಜುವೆನು ಬಿನ್ನಹಕೆ ಬಾಂಧವ
ವಂಜಿಕೆಯು ನಭಕೊತ್ತುತಿದೆ ಕೇ
ಳಂಜನಾ ಸುತ ತನ್ನ ಸಲುಗೆಯ ಮಾತ ಸಲಿಸುವೊಡೆ
ಅಂಜದೆಂಬೆನು ದನುಜ ಪುರಕೆ ಧ
ನಂಜಯನ ಹೊತ್ತಿಸಿದ ಖಳರನು
ಭಂಜಿಸಿದ ಸಾಗರವ ದಾಂಟಿದ ರೂಪು ತೋರೆಂದ ೩೧

ಈ ಯುಗದ ಗುಣ ಧರ್ಮವಾ ತ್ರೇ
ತಾಯುಗದವರಿಗೈದದಾ ತ್ರೇತಾ
ಯುಗವು ಸರಿಯಿಲ್ಲ ಕೃತಯುಗದೇಕ ದೇಶದಲಿ
ಆ ಯುಗದಲಾ ಮನುಜರಾ ಸ
ತ್ವಾಯುವಾ ಸಾಮರ್ಥ್ಯವಾ ತರು
ವಾಯ ಯುಗದಲಿ ಸಲ್ಲದೆಂದನು ನಗುತ ಹನುಮಂತ ೩೨

ಕೃತಯುಗದವರು ತ್ರೇತೆಯವರಿಂ
ದತಿ ಪರಾಕ್ರಮ ಯುಕ್ತರವರದು
ಭುತದ ಬಲವೀ ತ್ರೇತೆಯವರಲಿ ದ್ವಾಪರ ಸ್ಥಿತಿಗೆ
ವಿತತ ಸತ್ವರು ಕಲಿಯುಗದ ದು
ರ್ಮತಿ ಮನುಷ್ಯವ್ರಾತ ಹೀನಾ
ಕೃತಿ ಕಣಾ ಯುಗಧರ್ಮ ಕೃತ ಮೊದಲಾಗಿ ಕಲಿಯುಗಕೆ ೩೩

ಹೀನಸತ್ವರು ಸತ್ಯ ಧರ್ಮ ವಿ
ಹೀನರರ್ಥ ಪರಾಯಣರು ಕುಜ
ನಾನುರಕ್ತರು ವರ್ಣ ಧರ್ಮಾಶ್ರಮ ವಿದೂಷಕರು
ದಾನಿಗಳು ದುಷ್ಪಾತ್ರದಲಿ ಗುಣ
ಮೌನಿಗಳು ಗರ್ವಿತರು ಮಿಥ್ಯಾ
ಜ್ಞಾನಿಗಳು ಕಲಿಯುಗದ ಮನುಜರು ಭೀಮ ಕೇಳೆಂದ ೩೪

ಅದರಿನೀ ದ್ವಾಪರದ ಕಡೆಯಲಿ
ಯುಚಿತ ಮಾನುಷ ಕರ್ಮ ಸಂಶಯ
ವಿದರೊಳೆಮ್ಮಯ ರೂಪು ಗೋಚರವಲ್ಲ ಮರ್ತ್ಯರಿಗೆ
ಇದು ನಿಧಾನವು ಭೀಮಯೆನೆ ತ
ತ್ಪದ ಯುಗಕೆ ಮುಗುಳೆರಗಿ ನಿರ್ಬಂ
ಧದಲಿ ಬಿನ್ನಹ ಮಾಡಲಮ್ಮೆನು ರೂಪ ತೋರೆಂದ ೩೫

ಆದಡಿನ್ನು ನಿರೀಕ್ಷಿಸೆನುತ ನಿ
ನಾದದಲಿ ನೆಲ ಬಿರಿಯೆ ಬಾಲದ
ಬೀದಿವರಿ ಬಾಸಣಿಸೆ ಘನ ನಕ್ಷತ್ರ ಮಂಡಲವ
ಮೇದಿನಿಯ ಹೊರೆಗಾರರಳ್ಳಿದೆ
ಯಾದರಳುಕಿದವದ್ರಿಗಳು ಸ
ಪ್ತೋದಧಿಗಳಂಜಿದವೆನಲು ಹೆಚ್ಚಿದನು ಕಲಿ ಹನುಮ ೩೬

ಮೇರುವಿನ ತಪ್ಪಲಲಿ ಬೆಳೆದ ಬ
ಲಾರಿ ಚಾಪವೊ ಮೇಣ್ ತ್ರಿವಿಕ್ರಮ
ನಾರುಭಟೆಯಲಿ ಜಡಿವ ಜ್ಯೋತಿರ್ಗಣದ ಬಲು ಮಿಳಿಯೊ
ಚೂರಿಸುವ ಬಲು ಬಾಲವೋ ಜಂ
ಭಾರಿ ಭವನವನಳ್ಳಿರಿಯೆ ತ್ರಿಪು
ರಾರಿಯೊಡ್ಡಿನ ಹೊಳಹಿನಲಿ ಹೊಳೆ ಹೊಳೆದನಾ ಹನುಮ ೩೭

ನೋಡಿದನು ನಡುಗಿದನು ಕಂಗಳ
ಕೋಡಿಯಲಿ ನೀರೊರೆಯೆ ಹರುಷದ
ರೂಢಿಯಲಿ ಜೊಮ್ಮೆದ್ದು ಮನ ಡೆಂಡಣಿಸಿ ಭೀತಿಯಲಿ
ಬಾಡು ಮೋರೆಯನೆತ್ತಿ ಕೈಗಳ
ನೀಡಿ ಕಂಗಳ ಮುಚ್ಚಿ ಮರಳಿದು
ನೋಡಿ ಶಿವ ಶಿವಾಯೆನುತ ಬೆಚ್ಚಿದನಡಿಗಡಿಗೆ ಭೀಮ ೩೮

ಸಾಕು ಸಾಕಂಜಿದೆನು ಮನುಜರು
ಕಾಕು ಬಲರು ನಿಜ ಸ್ವಭಾವವ
ನೇಕೆ ಬಿಡುವೆವು ತಿಳಿದು ತಿಳಿಯೆವು ಕಂಡೊಡಂಜುವೆವು
ಸಾಕು ಪೂರ್ವದ ರೂಪಿನಲಿ ನಿ
ರ್ವ್ಯಾಕುಲನ ಮಾಡೆನಲು ಪವನಜ
ನಾ ಕಪೀಶ್ವರ ನಗುತ ಮುನ್ನಿನ ರೂಪ ಕೈಕೊಂಡ ೩೯

ಅಂಜದಿರು ನೀನಿನ್ನು ಮೆಚ್ಚಿದೆ
ನಂಜಲಿಸು ನಾ ಸಲಿಸುವೆನು ನ
ಮ್ಮಂಜನಾ ದೇವಿಯರು ಕುಂತೀದೇವಿಯಾದರಲೆ
ರಂಜಕರು ನಾವಲ್ಲ ಹೇಳು ಸ
ಮಂಜಸದಲೆನೆ ಭೀಮ ನಗುತ ಧ
ನಂಜಯನ ಟೆಕ್ಕೆಯಕೆ ಬಿಜಯಂಗೈಯ ಬೇಕೆಂದ ೪೦

ಐಸೆ ಸಲಿಸಿದೆನೆನುತಲಾ ಕಪಿ
ಯಾ ಸಮಯದಲದೃಶ್ಯವಾಗೆ ವಿ
ಕಾಸವಾದುದು ವಿಸ್ಮಯಕೆ ಪವಮಾನ ನಂದನನ
ಆ ಸುಗಂಧಿಕ ಕಮಲ ತಾನಿ
ನ್ನೇಸು ದೂರವೊ ದ್ರುಪದಸುತೆ ತನ
ಗೇಸು ಮುನಿವಳೊ ಹಾಯೆನುತ ಹರಿದನು ವನಾಂತರವ ೪೧

ಧರಣಿಪತಿ ಕೇಳ್ ಬಹಳ ವಿಪಿನಾ
ತರವನಂತವ ಕಳೆದು ಬರೆಬರೆ
ಸರಸಿಜದ ಮೋಹರದ ಮುಂದೈತಪ್ಪ ಪರಿಮಳದ
ಮೊರೆವ ತುಂಬಿಯ ತಟ್ಟುಗಳ ತನಿ
ವರಿವ ತಂಪಿನ ತುರುಗಲಿನ ತ
ತ್ಸರಸಿಯನು ದೂರದಲಿ ಕಂಡುಬ್ಬಿದನು ಕಲಿಭೀಮ ೪೨

ಒಗುಮಿಗೆಯ ಪರಿಮಳದ ಕಂಪಿನ
ತಗಡ ತೆಕ್ಕೆಯ ಬೀದಿವರಿಗಳ
ಮುಗುಳ ಮೊಗ್ಗೆಯ ತೆಗೆವ ತುಂಬಿಯ ಲಳಿಯ ಲಗ್ಗೆಗಳ
ಹೊಗರ ಹೊರಳಿಯ ಕಿರುದೆರೆಯ ನೂ
ಕುಗಳ ತಳಿತ ತುಷಾರ ಭಾರದ
ಸೊಗಸ ಸೇರಿಸಿ ಮಂದಮಾರುತನಪ್ಪಿದನು ಮಗನ ೪೩

ಝಳದ ಲಳಿ ಲಟಕಟಿಸೆ ಮಾರ್ಗ
ಸ್ಖಲಿತ ಖೇದ ಸ್ವೇದ ಬಿಂದುಗ
ಳೊಳ ಸರಿಯೆ ರೋಮಾಳಿ ಚಾಳಿಸೆ ತೃಷೆಯ ದೆಸೆ ಮುರಿಯೆ
ತಳಿತುದಾಪ್ಯಾಯನ ಮನೋರಥ
ಫಲಿಸಿತರಸಿಯ ಹರುಷ ದರ್ಪಣ
ಬೆಳಗುವುದು ಮರಳಿ ಭಾಪೆನುತ ಭುಲ್ಲವಿಸಿದನು ಭೀಮ ೪೪

ಸಾರೆ ಬರೆವರೆ ಕಂಡನಲ್ಲಿ ಕು
ಬೇರನಾಳಿದ್ದುದು ತದೀಯ ಸ
ರೋರುಹದ ಕಾಹಿನಲಿ ಯಕ್ಷರು ಲಕ್ಷ ಸಂಖ್ಯೆಯಲಿ
ಸಾರೆ ಚಾಚಿದ ಹರಿಗೆಗಳ ಕರ
ವಾರಿಗಳ ಹೊದೆಯಂಬು ಚಾಪ ಕ
ಠಾರಿ ಸಲ್ಲೆಹ ಸಬಳಗಳ ಸೋಪಾನ ಮಾರ್ಗದಲಿ ೪೫

ಎದ್ದವರಿದಿರಾಗಿ ಭೀಮನ
ಹೊದ್ದಿದರು ನೀನಾರು ಹದ್ದಿಗೆ
ಬಿದ್ದಿನನೊ ಮೇಣ್ ಮಿತ್ರಭಾವದಲೆವಗೆ ಬಿದ್ದಿನನೊ
ಉದ್ದುರುಟುತನ ನಿನ್ನ ಮೋರೆಯ
ಲಿದ್ದುದೈ ನೀನಾರು ನಿನಗೇ
ನಿದ್ದುದಿಲ್ಲಿಯೆನುತ್ತ ಜರೆದರು ಯಕ್ಷರನಿಲಜನ ೪೬

ನಾವಲೇ ಕುಂತೀ ಕುಮಾರರು
ಭೂಪಭೂವಲ್ಲಭರು ನಮ್ಮಯ
ದೇವಿಗಾದುದು ಬಯಕೆ ಸೌಗಂಧಿಕ ಸರೋರುಹದ
ಠಾವು ಕಾಣಿಸಿ ಕೊಂಡು ಬಹುದಾ
ತಾವರೆಯನೆನೆ ಬಂದೆವಿಲ್ಲಿಗೆ
ನೀವು ಕಾಹಿನ ಬಂಟರೆಂಬುದನರಿಯೆವಾವೆಂದ ೪೭

ಐಸಲೇ ತಪ್ಪೇನು ನೀ ಯ
ಕ್ಷೇಶನಲ್ಲಿಗೆ ಹೋಗಿ ಬೇಡುವು
ದೀ ಸರೋರುಹವಾವ ಘನ ಧನಪತಿಯುದಾರನಲೆ
ಮೀಸಲಿನ ಸರಸಿಯಲಿ ದೃಷ್ಟಿಯ
ಸೂಸಬಹುದೇ ರಾಯನಾಜ್ಞಾ
ಭಾಷೆಯಿಲ್ಲದೆ ಬಗೆಯಲರಿದೆಂದುದು ಭಟಸ್ತೋಮ ೪೮

ಬೇಡಲರಿಯೆವು ಬೇಡುವರ ಕೂ
ಡಾಡುವರು ನಾವಲ್ಲ ಕದನವ
ಬೇಡಬಲ್ಲೆವು ಕರೆಯಿ ಕೊಡಲಾಪರೆ ಧನೇಶ್ವರನ
ಬೇಡುವುದು ಗದೆ ನಿಮ್ಮ ವಕ್ಷವ
ತೋಡಿ ನೆತ್ತರುಗೊಳದಲೋಕುಳಿ
ಯಾಡುವುದನೆಂದನಿಲಸುತ ಬೀಸಿದನು ನಿಜಗದೆಯ ೪೯

ಎಲೆಲೆ ಕಪಿ ಯಕ್ಷ ರಾಕ್ಷಸ
ದಳವನೊಟ್ಟೈಸುವನೆ ಹೆ
ಬ್ಬುಲಿಯ ಹಿಂಡಿಗೆ ಹೋತ ಹೊಡಕರಿಸಿತು ಮಹಾದೇವ
ತಲೆಯ ಹೊಯ್ ಚೆಂಡಾಡು ತಿನ್ನಿವ
ನೆಲುವನೆನುತೀಟಿಯಲಿ ಸಬಳದ
ಲಲಗಿನಲಿ ಖಡುಗದಲಿ ಹೊಯ್ದರು ಪವನ ನಂದನನ ೫೦

ತಾಗಿದೆಳೆ ಮುಂಳ್ಳಿನಲಿ ಮದಗಜ
ಸೀಗುರಿಸುವುದೆ ಭಟರ ಕೈದುಗ
ಳೇಗುವವು ಪವಮಾನಸುತ ಕೈದೋರೆ ಖಾತಿಯಲಿ
ತಾಗಿದವದಿರನಿಕ್ಕಿದನು ರಣ
ದಾಗಡಿಗರನುಯಿಕ್ಕಿದನು ಕೈ
ದಾಗಿಸಿದನನಿಬರಲಿ ಗಂಡುಗತನದ ಗಾಡಿಕೆಯ ೫೧

ಗಾಡಿಸಿತು ಗಜಬಜ ಕುಬೇರನ
ಬೀಡಿನಗ್ಗದ ಬಂಟರೇ ಕೈ
ಮಾಡಿರೈ ಕೊಳಗಾಹಿಗಳು ಫಡ ಹಿಂಗಬೇಡೆನುತ
ಜಾಡಿಸುವ ಮಣಿಮಯದ ಗದೆಯಲಿ
ತೋಡುವೊಯ್ಲಿನ ತುಡುಕುಗಾಯದ
ನೀಡು ಮೊನೆಗಳ ವಿಗಡನಿಕ್ಕಿದನದಟ ರಕ್ಕಸರ ೫೨

ಹಾರಿದವು ಹಂಸೆಗಳು ತುದಿಮರ
ನೇರಿದವು ನವಿಲುಗಳು ತುಂಡವ
ನೂರಿ ನೀರೊಳು ಮುಳುಗಿ ಮರಳವು ಜಕ್ಕವಕ್ಕಿಗಳು
ಚೀರಿದವು ಕೊಳವಕ್ಕಿ ಜಲದಲಿ
ಜಾರಿ ತಾವರೆಯೆಲೆಯ ಮರೆಗಳ
ಲಾರಡಿಗಳಡಗಿದವು ಕೋಳಾಹಳಕೆ ಪವನಜನ ೫೩

ಚೆಲ್ಲಿದರು ರಕ್ಕಸರು ಯಕ್ಷರು
ಬಿಲ್ಲ ಬಿಸುಟರು ಗುಹ್ಯಕರು ನಿಂ
ದಲ್ಲಿ ನಿಲ್ಲರು ಕಿನ್ನರರನಿನ್ನೇನನುಸುರುವೆನು
ಗೆಲ್ಲವಿದು ಲೇಸಾಯ್ತು ಮಾನವ
ನಲ್ಲಿ ನಮಗೀ ಭಂಗ ಭಯರಸ
ವಲ್ಲಿ ಭಾಪುರೆ ವಿಧಿಯೆನುತ ಬೆಚ್ಚಿದುದು ಭಟಸ್ತೋಮ ೫೪

ಗಾಯುವಡೆದರು ಕೆಲರು ಕೆಲರಸು
ಬೀಯುವಾದುದು ಬಿಡುದಲೆಯ ಬಲು
ನಾಯುಕರು ಸಂತೈಸಿದರು ಕೌಬೇರ ಭವನದಲಿ
ವಾಯುಸುತನೀ ವಿಜಯ ಸಿರಿಯಂ ಪ
ಸಾಯಿತಂಗಭಿಷೇಕವೆಂದು ಗ
ದಾಯುಧವನಲುಬಿದನು ಕೊಳನಲಿ ಚಾಚಿದನು ತಡಿಗೆ ೫೫

ತೊಳೆದು ಚರಣಾನನವ ನಡುಗೊಳ
ದೊಳಗೆ ಹೊಕ್ಕಡಿಗಡಿಗೆ ಮಿಂಗೆ ಮಂ
ಕ್ಷಾಳಿಸಿ ಶೀಗದಲುಗುಳಿ ದಿವ್ಯಾಂಭೋಜ ಪರಿಮಳವ
ವಿಲಸದಲಿ ತನಿಹೊರೆದ ಶೀತಳ
ಜಲವ ಕುಡಿದಾಪ್ಯಾಯನಾಂತರ
ಲಲಿತ ಹೃದಯ ನಿಮಿರ್ದು ಹಿಡಿದನು ಕಮಲಪಙ್ಕ್ತಿಗಳ ೫೬

ಚಾಚಿದನು ಬರಿ ಕೈಯನಬುಜಕೆ
ಚಾಚುವಿಭಪತಿಯಂತೆ ತುಂಬಿಗ
ಳಾ ಚಡಾಳ ಧ್ವನಿಯ ದಟ್ಟಣೆ ಮಿಗಲು ಚೀರಿದವು
ವೀಚಿ ಮಸಗುವ ಕೊಳನು ಜಿನ ಋಷಿ
ಯಾಚರಣೆಯೊಳು ಕಮಲ ವನವನು
ಲೋಚಿನಲಿ ಲಾವಣಿಗೆಗೊಂಡನು ಭೀಮ ನಿಮಿಷದಲಿ ೫೭

ತಿರಿದು ತಾವರೆ ವನವ ಕಕ್ಷದೊ
ಳಿರುಕಿ ಗದೆಯನು ಕೊಂಡು ಸರಸಿಯ
ಹೊರವಳಯದಲಿ ನಿಂದು ಕಾಹಿನ ಯಕ್ಷ ರಾಕ್ಷಸರ
ಒರಲಿ ಕರೆದನು ನಿಮ್ಮ ಕೊಳನಿದೆ
ಬರಿದೆ ದೂರದಿರೆಮ್ಮನೆನುತಾ
ಸರಿನ ಮಾತಿನ ನಲವಿನಲಿ ಮರಳಿದನು ಕಲಿಭೀಮ ೫೮

ಹನ್ನೊಂದನೆಯ ಸಂಧಿ

ಸೂ. ಭೀಮ ಕೊಂದನು ಕಲಿಜಟಾಸುರ
ನಾ ಮಹಾ ಮಣಿಮಾನನನು ಬಳಿ
ಕೀ ಮಹೀತಳಕಿಳಿದು ಕಂಡನು ಪಾರ್ಥನಗ್ರಜನ

ಕೇಳು ಜನಮೇಜಯ ಯುಧಿಷ್ಠಿರ
ನೋಲಗದೊಳುತ್ಪಾತ ಶತವಿವ
ರಾಲಿಗಳನಂಜಿಸಿದವತಿ ರಂಜಿಸಿದವದುಭುತವ
ಕೇಳಿದನಿದೇನೆಂದು ವರ ವಿ
ಪ್ರಾಳಿಯನು ಧೌಮ್ಯಾದಿ ಋಷಿಗಳು
ಹೇಳಿದರು ತಚ್ಛಕುನ ಸಂಗತಿಗಳ ಫಲೋತ್ತರವ ೧

ಸರಸ ಸೌಗಂಧಿಕದ ಪುಷ್ಪೋ
ತ್ತರಕೆ ಪವನಜ ಹೋದನೆಂಬುದ
ನರಸಿಯಿಂದರಿದವನಿಪತಿ ಪೂರಾಯ ದುಗುಡದಲಿ
ನರನ ಹದನೇನೋ ವೃಕೋದರ
ನಿರವು ತಾನೆಂತೆನುತ ಚಿಂತಾ
ಭರಿತನಿದ್ದನು ಭೀಮಸೇನನ ಕಾಂಬ ತವಕದಲಿ ೨

ಆ ಸಕಲ ಪರಿವಾರ ರಾಣೀ
ವಾಸ ಸಹಿತಾರಣ್ಯ ಭವನಾ
ಭ್ಯಾಸಿ ಬಂದನು ಭೀಮಸೇನನ ಗಮನ ಪಥವಿಡಿದು
ಆ ಸುಗಂಧಕ ಪದುಮ ಪರಿಮಳ
ಬಾಸಣಿಸಿತೀ ಜನ ಮನೋ ವಿ
ನ್ಯಾಸವನುಯಿದೆ ಬಂದ ಪವನಜನೆಂದುದೀ ಕಟಕ ೩

ಎನಲು ಬಂದನು ಭೀಮನಂಬುಜ
ವನವಿದಿರು ಬಂದಂತೆ ಕಂಪಿನ
ತನಿರಸದ ತಾವರೆಯ ತೆಕ್ಕೆಯ ತೋಳ ತೋರಿಕೆಯ
ಜಿನುಗು ದುಂಬಿಯ ಜಾಳಿಗೆಯ ತನಿ
ಮಿನುಗು ಮೋರೆಯ ಕಣ್ಣ ಕೆಂಪಿನ
ಘನ ಭಯಂಕರ ರೂಪ ಭೀಮನ ಕಂಡನವನೀಶ ೪

ಸೆಳೆದು ತಕ್ಕೈಸಿದನು ತಾವರೆ
ಗೊಳದ ತೋಟಿಯ ಹದಕೆ ಕಂಪಿಸಿ
ಬಳಿಕ ಕಪಿ ದರ್ಶನದ ಕೌತೂಹಲಕೆ ಭುಲ್ಲವಿಸಿ
ನಳಿನ ಗಂಧದ ಗಾಢತರ ಸುಖ
ದೊಳಗೆ ಹೊಂಪುಳಿವೋಗಿ ಭೂಪತಿ
ತಿಲಕನಿದ್ದನು ಗಂಧಮಾದನ ಗಿರಿಯ ತಪ್ಪಲಲಿ ೫

ಗಿರಿಯ ತುದಿಗೇರುವ ಮಹೀಶನ
ಭರವಸವನಶರೀರ ದನಿ ಪರಿ
ಹರಿಸಲಿಳಿದನು ಮರಳಿ ಬಂದನು ಬದರಿಕಾಶ್ರಮಕೆ
ಅರಸ ಕೇಳೈ ಮತ್ತೆ ಮಾರಿಯ
ಪರುಠವವನನಿಲಜನು ಬೇಟೆಗೆ
ಹರಿದನಿತ್ತಲು ಬಂದು ಮುತ್ತಿತು ದಾನವರ ಥಾಳಿ ೬

ಖಳ ಜಟಾಸುರನೆಂಬನಾ ದ್ವಿಜ
ಕುಲವನಂಜಿಸಿ ಯಮಳರೊಡ
ನಿಟ್ಟಿಳಿಸಿ ಕಾದಿ ಕಠೋರದಲಿ ಪಿಡಿದನು ಮಹಾಸತಿಯ
ಬಲುಗಡಿಯನಿವನೊಡನೆ ಹೋರಿದು
ಬಳಲಿದರು ಬೆಂಬತ್ತಿದರು ಗಾ
ವಳಿಯ ಗಜಬಜ ತಿರುಗಿತಿತ್ತಲು ಪವನಜನ ಹೊರೆಗೆ ೭

ತಳಿರ ಕೈಗಳ ಮೊರೆಯ ಬಾಯ್ಗಳ
ಜಲದ ಕಂಗಳ ತಾಪದಿಂದೊಳ
ಝಳದಿಯುಗಿವಳ್ಳೆಗಳ ಬಲು ಭಯವಾಂತ ಕೊರಳುಗಳ
ಕಳಕಳದ ಕಾಲುವೆಯ ಭಂಗದ
ಹೊಳಹುಗಳ ಹೋಲುವೆಯ ಸವ್ಯಾ
ಕುಲರ ಕಂಡನು ಭೀಮನೇನೇನೆಂದು ಬೆಸಗೊಂಡ ೮

ಓಡಿದರರಸಿಯುಸವನಿಪತಿ ಹಿಡಿ
ವಡೆದನನುಜರು ಸಹಿತ ಹಾರುವ
ರಡವಿಯಲಿ ಹಾಯಿದರು ಚೆಲ್ಲಿತು ನಿಮ್ಮ ಪರಿವಾರ
ಕಡುಹು ಘನವಿದೆ ದಾನವರವಂ
ಗಡವೆನಲು ಘನ ಸಿಂಹ ನಾದದ
ಸಿಡಿಲ ಶಿಕ್ಷಾ ಗುರುವೆನಲು ಮೊಳಗಿದನು ಕಲಿಭೀಮ ೯

ಧಾಳಿಯಿಟ್ಟನು ದಾನವರ ದೆ
ಖ್ಖಾಳದಲ್ಲಿಗೆ ಘಲ್ಲಿಸಿದನು
ಬ್ಬಾಳುಗಳನಿಟ್ಟೊರಸಿ ಬಿಡಿಸಿದ ತನ್ನವರ ಸೆರೆಯ
ಸೀಳಿ ನಾಯ್ಗಳ ನೆತ್ತರಿನ ತನಿ
ಗಾಲುವೆಯಲೇ ಬೆಳಸುವೆನು ದಿವಿ
ಜಾಳಿಗಳ ಸಂತೋಷ ಸಸಿಯನೆನುತ್ತ ಗರ್ಜಿಸಿದ ೧೦

ಮುಸಗಿತಿಬ್ಬರಿಗದುಭುತಾಹವ
ವು ಸುರ ಧಾಳಾ ಧೂಳಿ ಮಿಗೆ ಘ
ಟ್ಟಿಸಿದನವನನು ದಂಡೆಯಲಿ ತಡೆಗಾಲಲೊಡೆ ಹೊಯ್ದು
ಬಿಸುಗುದಿಯ ನವರುಧಿರ ಜಲ ಜಾ
ಳಿಸೆ ನವದ್ವಾರದಲಿ ದೈತ್ಯನ
ಕುಸುಕಿರಿದು ತಿವಿತಿವಿದು ಕೊಂದನು ಕಲಿ ಜಟಾಸುರನ ೧೧

ಅರಸ ಕೇಳಾ ದಾನವನ ತನು
ಬಿರಿದು ಬಿದ್ದುದು ಬಾತ ಹೆಣನು
ಬ್ಬರದ ಹೊಲಸಿನ ಗವಲು ಕವಿದುದು ಕೂಡೆ ವನದೊಳಗೆ
ಧರಣಿಪತಿ ತದ್ಬದರಿಕಾಶ್ರಮ
ವರ ತಪೋವನದಿಂದ ತೆಂಕಲು
ತಿರುಗಿ ಬಂದನು ಸಾರಿದನು ವೃಷ ಪರ್ವತಾಶ್ರಮವ ೧೨

ಆ ತಪೋವನವಿವರ ಘಲ್ಲಣೆ
ಗಾತುದಿಲ್ಲ ವಿನೋದದಲಿ ವಿ
ಖ್ಯಾತ ಶೈಲದ ಮೇಖಲೆಯ ತುದಿಗೇರಿದನು ಭೀಮ
ಈತನನು ಹಳಚಿದನು ದೈತ್ಯನ
ಭೀತ ಮಣಿಮಾನೆಂಬವನು ಪದ
ಘಾತಿಯಲಿ ಲಟಕಟಿಸೆ ಗಿರಿ ಕಾದಿದರು ಪಟುಭಟರು ೧೩

ಕೊಂದನವನನು ವಿಗತ ಶಾಪನು
ನಿಂದನಿದಿರಲಿ ಯಕ್ಷರೂಪಿನ
ಲಂದಗಸ್ತ್ಯನ ಶಾಪ ವೃತ್ತಾಂತವನು ವಿವರಿಸಿದ
ಬಂದನಲ್ಲಿಗೆ ಯಕ್ಷಪತಿ ನಲ
ವಿಂದಲಿವರನು ವಿವಿಧ ವಸ್ತು ಗ
ಳಿಂದ ಸತ್ಕರಿಸಿದನು ಕೊಂಡಾಡಿದನು ಪಾಂಡವರ ೧೪

ಅರಸನತಿ ಸಂತೋಷಮಯ ಸಾ
ಗರದಿ ಮುಳುಗುವನೊಮ್ಮೆ ನಿಮಿಷಕೆ
ನರನ ವಿರಹದ ದುಃಖಸಾಗರದೊಳಗೆ ಸೈಗೆಡೆವ
ಪರಮ ಋಷಿಗಳ ಮಧುರ ವಚನೋ
ತ್ತರಕೆ ತಿಳಿವನದೊಮ್ಮೆ ಪುನರಪಿ
ಮರುಳಹನು ಫಲುಗುಣನ ನೆನೆದರಸ ಕೇಳೆಂದ ೧೫

ಅರಸನಲಿ ಬೇರೂರಿ ಮುಗುಳಂ
ಕುರಿಸಿದುದು ಭೀಮನಲಿ ನಕುಲನ
ಲೆರಡು ಮೂರೆಲೆಯಾಯ್ತು ಸಹದೇವನಲಿ ಕವಲೊಡೆದು
ಅರಸಿಯಲಿ ಸಲೆ ಹೂತು ಕಾತು
ಬ್ಬರಿಸುತಿದ್ದುದು ಶೋಕಲತೆ ತ
ತ್ಪರಿಕರದ ಕರಣಾವಳಿಯ ಹಬ್ಬುಗೆಯ ಹರಹಿನಲಿ ೧೬

ಮರೆದನೋ ನಮ್ಮನಿಬರನು ದಿಟ
ಮರೆಯಲುಚಿತವಲೇ ಸುರೇಂದ್ರನ
ಸೆರಗು ಸೋಂಕುವ ಸಲುಗೆಯುಂಟೇ ಮರ್ತ್ಯಜಾತಿಯಲಿ
ಉರುವ ಸುರಪನ ಸಾರ ಸೌಖ್ಯದೊ
ಳರಿಯನೋ ನಮ್ಮಾ ಪ್ರವಾಸದ
ಸೆರೆಗೆ ನರನಂಗೈಸನೆಂದವನೀಶ ಚಿಂತಿಸಿದ ೧೭

ವಾಮ ನಯನ ಸ್ಫುರಣ ಪರಿಗತ
ವಾಮ ಬಾಹು ಸ್ಪಂದವಾದುದು
ಭಾಮಿನಿಗೆ ಭೂಪತಿಗೆ ಚಲಿಸಿತು ದಕ್ಷಿಣಾಂಗದಲಿ
ವೈಮನಸ್ಯವಸನ ನಿರಸನ
ಕ್ಕೀ ಮಹಾ ಶಕುನಂಗಳಿವೆಯೆಂ
ದಾ ಮಹೀಪತಿ ನೆನೆವುತಿರ್ದನು ಫಲುಗುಣನ ಬರವ ೧೮

ಅರಸ ಕೇಳೈ ಹಿಮದ ಹೊಯ್ಲಿನ
ಸರಸಿಜಕೆ ರವಿಯಂತೆ ಶಿಶಿರದ
ಸರಿದೆಲೆಯ ವನದಲಿ ವಸಂತನ ಬರವಿನಂದದಲಿ
ಸುರ ವಿಮಾನ ಶ್ರೇಣಿಗಳ ನವ
ಪರಿಮಳದ ಪೂರದಲಿ ಭಾರತ
ವರುಷಕಿಳಿದನು ಪಾರ್ಥ ಬಂದನು ಧರ್ಮಜನ ಹೊರೆಗೆ ೧೯

ಏನನೆಂಬೆನು ಜೀಯ ಕುಂತೀ
ಸೂನು ಕಂಡನು ದೂರದಲಿ ಸುರ
ಮಾನಿನೀಜನದಂಗವಟ್ಟದಪೂರ್ವ ಪರಿಮಳದ
ಆನನೇಂದುಗಳಾಭರಣ ಮು
ಕ್ತಾನುಕೃತ ತಾರಾ ಮಯೂಖ ವಿ
ತಾನದಲಿ ಹೊಳೆಹೊಳೆದು ಮೆರೆವ ಮಹೇಂದ್ರ ಮಣಿರಥವ ೨೦

ಆರದೀ ರಥವೆನುತ ತಿರುಗಿ ಮ
ಹೀರಮಣನಾಲಿಗಳು ಹರಿದವು
ಭಾರಣೆಯ ಜನ ನಯನ ಕೋಟಿಯ ಕೊಲ್ಲಣಿಗೆ ಮಿಗಿಲು
ಭೂರಿ ಮಣಿ ರಶ್ಮಿಗಳ ಚಿಮ್ಮುವ
ಚಾರು ಚಮರಿಯ ತುರಗ ನಿಕರ ಗ
ಭೀರ ಹೇಷಾರವದಲಿಳಿದುದು ರಥ ಸುರೇಶ್ವರನ ೨೧

ರಥ ಮಹೇಂದ್ರನದೀತನೆಮ್ಮತಿ
ರಥನಲಾ ನೆರೆ ನೋಂತು ಪಡೆದಳೊ
ಪೃಥೆಯೆನುತ ಕವಿದುದು ಮುನಿವ್ರಜ ಮಿಕ್ಕವರ ನಗುತ
ಮಥಿತ ರಿಪುವವಧಾನ ಲೋಕ
ಪ್ರಥಿತ ನಿರುಪಮುವೆಂಬ ಸುರ ಸಾ
ರಥಿಯ ನೆಲನುಗ್ಗಡಣೆಯಲಿ ನಗುತಿಳಿದನಾ ರಥವ ೨೨

ಅರಸ ಕೇಳುಬ್ಬಿನಲಿ ಧೌಮ್ಯನ
ಧರಣಿಪನ ರೋಮಶನ ಭೀಮನ
ಚರಣದಲಿ ಮೈಯಿಕ್ಕಿ ಕೈ ಮುಗಿದೆರಗಿ ಮುನಿಜನಕೆ
ಹರಸಿದನು ಹೊರವಂಟ ನಕುಲಾ
ದ್ಯರನು ಮಧುರ ಪ್ರೀತಿ ವಚನ
ಸ್ಫುರದ ಮಂದಸ್ನೇಹದಲಿ ನೋಡಿದನು ಪರಿಜನವ ೨೩

ಬಿಗಿದ ಗವಸಣಿಗೆಯಲಿ ಸೂರ್ಯನ
ನುಗಿವವೋಲ್ ಮಾಣಿಕ್ಯ ಮಣಿರ
ಶ್ಮಿಗಳ ರಹಿ ರಂಜಿಸೆ ಸುರೇಶ್ವರನಿತ್ತ ಭೂಷಣವ
ತೆಗೆತೆಗೆದು ಯಮನಂದನಂಗೋ
ಲಗಿಸಿ ಭೀಮಂಗಿತ್ತು ನಕುಲಾ
ದಿಗಳ ಮೈಯಲಿ ತೊಡಿಸಿದನು ಕೈಯಾರೆ ಕಲಿಪಾರ್ಥ ೨೪

ಕರೆಸಿ ಕಾಣಿಸಿದನು ಧನಂಜಯ
ಸುರಪತಿಯ ಸಾರಥಿಯನಮರೇ
ಶ್ವರ ವರೂಥದ ಸನ್ನಿವೇಶದ ಸಕಲ ಶೋಭೆಗಳ
ಅರಸ ಮೊದಲಾದಖಿಳ ಜನ ಭೂ
ಸುರರು ಕಂಡರು ಮಾತಲಿಯು ಸ
ತ್ಕರಿಸಿ ಸಂಭಾವಿಸಿದನವನೀಪತಿ ಸರಾಗದಲಿ ೨೫

ಕುಶಲವೇ ದೇವೇಂದ್ರನಾತನ
ಶಶಿವದನೆಯರು ಸುಖಿಗಳೇ ರಾ
ಕ್ಷಸರು ವಶವರ್ತಿಗಳೆ ನಿರ್ಜರ ನಗರಿ ನಿರ್ಭಯವೆ
ದೆಸೆಯುವರು ಮೂಲೆಗೆಳೆವರು ಮ
ನ್ನಿಸುವರೇ ಸುರಲೋಕ ಸುಖವನು
ವ್ಯಸನ ಭರ ಭಂಗಿಸದಲೇ ಹೇಳೆಂದನಾ ಭೂಪ ೨೬

ಭಜಿಸಿದೈ ಭರ್ಗನನು ಶಾಂಭವ
ಯಜನ ಸಾರ ಸಮಾಧಿ ಶಿವಪದ
ರಜವ ಬೆರಸಿತೆ ಬಗೆಯ ಕುಣಿ ತೆವರಾಯ್ತೆ ತಡಿದೆಗೆದು
ವಿಜಯ ಶಬ್ದವು ಪಾರ್ಥ ಕೃತಿಯಲಿ
ಯಜಡವಲ್ಲಲೆ ವೈರಿ ರಾಯರ
ಕುಜನತಾ ವಿಚ್ಛೇದ ಸಾಧ್ಯವೆಯೆಂದನಾ ಭೂಪ ೨೭

ಜೀಯ ಚಿತ್ತೈಸಿಂದ್ರನಲ್ಲಿ ಸ
ಹಾಯವಾದನು ಶಿವನ ಕಾರು
ಣ್ಯಾಯುಧವೆ ಮಸೆದುದು ಸುರೇಂದ್ರ ಸ್ನೇಹ ಸಾಣೆಯಲಿ
ಆಯಿತೇ ಧೂರ್ಜಟಿಯ ಶರ ಲೋ
ಕಾಯತರಿಗೇನೆಂಬೆನದು ನಿ
ರ್ದಾಯದಲಿ ವಶವರ್ತಿಯಾಯ್ತೆನಗೆಂದನಾ ಪಾರ್ಥ ೨೮

ಹರನ ಕರುಣಾಲಾಭ ಲೋಕೋ
ತ್ತರದ ಪರಿತೋಷದಲಿ ನಾನಿರೆ
ಸುರಪ ಕಳುಹಿದನೀ ರಥವನೀ ವಿಮಳ ಮಾತಲಿಯ
ಕರೆಸಿದನು ನಿಜ ನಗರಿಗಾ ನಿ
ರ್ಜರ ನಿಕರವಾ ಸತಿಯರಾ ದಿ
ಕ್ಪರಿವೃಢರು ಕೊಂಡಾಡಿತೆನ್ನನು ರಾಯ ಕೇಳೆಂದ ೨೯

ಪಾಶುಪತ ಶರ ಭುವನದೂರ್ಧ್ವ
ಶ್ವಾಸ ಕೃತಿ ಕೋವಿದನಲೇ ಚಿ
ತ್ತೈಸಿ ಬಲ್ಲಿರಿ ನಿಮ್ಮಡಿಗಳಾಮ್ನಾಯ ವೀಥಿಯಲಿ
ಆ ಶರವಲೇ ಸೇರಿತೆನಗೆ ಮ
ಹೇಶನಿಂದಲ್ಲಿಂದ ಬಳಿಕ ಸು
ರೇಶನತಿ ಮನ್ನಿಸಿದನಮರಾವತಿಯೊಳೊಲವಿನಲಿ ೩೦

ಖ್ಯಾತಿವಡೆದೆನು ಶಿವನ ಕಾರು
ಣ್ಯಾತಿಶಯಕಿದು ಫಲವೆ ಸಾಕಿ
ನ್ನೇತಕಿದು ರಾಜಸ ವಿಡಂಬ ವಿಕಾರಕುಂಚಿತವಲೆ
ವೀತಿಹೋತ್ರ ಪರೇತಪತಿ ಪುರು
ಹೂತ ವರುಣಾದಿಗಳು ಕಾಂಡ
ವ್ರಾತದಲಿ ತೊಳೆದರು ಮನೋರಥಕಲಿತ ಕರ್ದಮವ ೩೧

ಕೇಳಿ ಮಿಗೆ ಹಿಗ್ಗಿದನು ತನು ಪುಳ
ಕಾಳಿ ತಳಿತುದು ಹರುಷವಾರಿಗ
ಳಾಲಿಗಳ ಹೊಳಿದವು ತೊಳಿದವಂತರವ್ಯಥೆಯ
ತೋಳ ಹಿಡಿದೆಳೆದಪ್ಪಿ ಪಾರ್ಥನ
ಬೋಳವಿಸಿದನು ಪೌರವಾನ್ವಯ
ಪಾಲಕನೆಯೆಂದರಸ ಮುಂಡಾಡಿದನು ಫಲುಗುಣನ ೩೨

ಮುರಿದುದಿನ್ನೇನಹಿತ ಬಲ ಹಗೆ
ಹರಿದುದೀ ದ್ರೌಪದಿಯ ಮೌಳಿಗೆ
ಕರುಬಿದವರಿಗೆ ಕಾಣಲಾಯ್ತು ಕೃತಾಂತನೋಲಗವ
ಕರೆದನೇ ಕರುಣವನು ಹರಹರ
ಹೆರೆನೊಸಲ ಬಲುದೈವವಿನಿತರ
ಹೊರಿಗೆ ಗದುಗಿನ ವೀರ ನಾರಾಯಣನ ಕರುಣದಲಿ ೩೩

ಹನ್ನೆರಡನೆಯ ಸಂಧಿ

ಸೂ. ಲೀಲೆ ಮಿಗೆ ನರನಮರಲೋಕದ
ಕಾಲಕೇಯ ನಿವಾತಕವಚರ
ಸೀಳಿ ಬಿಸುಟಂದವನು ಬಣ್ಣಿಸಿದನು ಮಹೀಪತಿಗೆ

ಕೇಳು ಜನಮೇಜಯ ಧರಿತ್ರೀ
ಪಾಲ ಧರ್ಮಜನರ್ಜುನನನುಪ
ಲಾಲಿಸಿದನುರೆ ಮುಳುಗಿದನು ಪುಳಕಾಶ್ರು ಪೂರದಲಿ
ಹೇಳು ಪಾರ್ಥ ಕಪರ್ದಿಯಸ್ತ್ರ
ವ್ಯಾಳ ಸಂಗ್ರಹಣ ಪ್ರಪಂಚವ
ನಾಲಿಸುವೆನೆನೆ ನೃಪತಿಗಭಿವರ್ಣಿಸಿದನಾ ಕಥೆಯ ೧

ಹರನ ಶರ ಲಾಭಾರ್ಥ ಸಿದ್ಧಿಗೆ
ಕರೆಸಿದನು ಸುರನಾಥ ರಾಗದ
ಲರುಹಲಾ ಸುರರಿಪುಗಳೊಳಿಗವನು ಸುರಾಚಾರ್ಯ
ಅರಿಗಳೆವಗೆ ನಿವಾತಕವಚರು
ಸುರಪದವಿ ಸೋಪದ್ರವದ ನಿ
ಷ್ಠುರವಿದೆಂದು ರಹಸ್ಯದಲಿ ನನಗೆಂದನಮರೇಂದ್ರ ೨

ಶಿವನ ಶರ ನಿನಗಾಯ್ತು ನಿರ್ಜರ
ನಿವಹವಿದೆ ನಾಕದಲಿ ಬಲು ದಾ
ನವರ ವಿಲಗದಿ ವೀಚಿ ಹೋದುದು ಸಗ್ಗ ಸೌಖ್ಯಫಲ
ಜವ ಸಭೆಯಂ ಜೀವರಿಗೆ ದುರ್ಜನ
ರವಗಡವು ಸುಜನರಿಗೆ ತಮ ಶಶಿ
ರವಿಗಳಿಗೆ ಮುನಿವಂತೆ ಖಳರಿದೆಯೆಂದನಮರೇಂದ್ರ ೩

ಮುಂದದ ನೆಲೆ ಶುಭದಿಕ್ಕೆ ಸೊಗಸಿನ
ಸದನ ಸೌಖ್ಯದ ಗರುಡಿ ಸೊಂಪಿನ
ಪದವಿ ಲೀಲೆಯ ತಾಣ ತಾಯ್ಮನೆ ಖೇಳ ಮೇಳವದ
ಮುದದ ಮಡು ಭೋಗೈಕನಿಧಿ ಸಂ
ಪದದ ಜನ್ಮಸ್ಥಳ ಮನೋರಥ
ದುದಯಗಿರಿ ಹಿಂದೀಸು ದಿನವಮರಾವತೀ ನಗರ ೪

ಕಳವಳದ ನೆಲೆ ಭಯದ ಜನ್ಮ
ಸ್ಥಳ ವಿಷಾದದ ಪೇಟೆ ಖಾತಿಯ
ನಿಳಯ ಖೋಡಿಯ ಕಟಕ ಭಂಗದ ಸಂಭವಸ್ಥಾನ
ಅಳುಕಿನಂಗಡಿ ಹಳುವಿನಾಡುಂ
ಬೊಲ ನಿರೋಧದ ಶಾಲೆ ದುಗುಡದ
ಕಳನೆನಿಸಿತೀ ನಗರಿ ಈಗಲು ಪಾರ್ಥ ಕೇಳೆಂದ ೫

ಸಿಡಿಲಕಾಲದೊಳೆರಗುವಂತಿರೆ
ಕಡಲು ಕಲ್ಪದೊಳುಕ್ಕುವಂತಿರೆ
ಪೊಡವಿಯಾಕಸ್ಮಿಕದೊಳಿಳಿವಂತಿರೆ ರಸಾತಳಕೆ
ತುಡುಕುವುದು ರಕ್ಕಸರ ಭಯ ಹುಡಿ
ಹುಡಿಯಹುದು ಸುರ ವಿಭವವೆಮಗಿ
ಮ್ಮಡಿಯಲವರು ನಿವಾತಕವಚರು ಪಾರ್ಥ ಕೇಳೆಂದ ೬

ಕೆತ್ತ ಕದ ತೆಗೆಯದು ಸುರೌಘದ
ಹೊತ್ತ ಸರಕಿಳಿಯದು ಸುಕಲ್ಪಿತ
ಮತ್ತಗಜ ರಥವಾಜಿ ತೆಗೆಯವು ಪುರದ ಬಾಹೆಯಲಿ
ತೆತ್ತು ಹರಿಯದು ಕಾದಿ ರಣದಲಿ
ಸತ್ತು ಜಂಗಿದು ಸುರರ ಸತಿಯರು
ತೊತ್ತಿರಾದರು ಖಳರ ಮನೆಗಳಿಗೆಂದನಮರೇಂದ್ರ ೭

ಭಯದ ಬಾಹೆಯಲಪಸರದ ನಿ
ಶ್ಚಯದ ದುಮ್ಮಾನದ ವಿಘಾತಿಯ
ಲಯದ ಲಾವಣಿಗೆಯ ವಿರಾಗದ ತಡಿಯ ಸಂಕಟದ
ಪಯದ ಪಾಡಿನ ಹೃದಯ ಕಂಪದ
ನಯನದೊರತೆಯ ಬಗೆಯ ಕೊರತೆಯ
ಜಯದ ಜೋಡಿಯ ದೇವರಿದೆ ನೋಡೆಂದನಮರೇಂದ್ರ ೮

ಅವರುಪೇಕ್ಷೆಯ ಉಳಿವಿನಲಿ ನ
ಮ್ಮವರ ಬೇಹಿನ ಸುಳಿವಿನಲಿ ಮೇ
ಣವರನಳುಕಿಸುವಾಧಿದೈವಿಕ ಕರ್ಮಗತಿಗಳಲಿ
ದಿವಿಜರಿಂದವರುಳಿದರಾ ದಾ
ನವರ ಮರ್ದಿಸಿ ದೇವಲೋಕವ
ನೆವಗೆ ನಿರುಪದ್ರವದಲೆಡೆಮಾಡೆಂದನಮರೇಂದ್ರ ೯

ಹೈ ಹಸಾದವು ನಿಮ್ಮ ಕೃಪೆಯುವ
ಗಾಹಿಸುವೊಡರಿದೇನು ದೈತ್ಯರು
ಸಾಹಸಿಗರೇ ಸದೆವೆನೀ ಸುರಜನಕೆ ಹಿತವಹರೆ
ಆ ಹರಾಸ್ತ್ರದೊಳಮರವೈರಿ
ವ್ಯೂಹ ಭಂಜನವಹುದು ನಿಷ್ಪ್ರ
ತ್ಯೂಹ ನಿಶ್ಚಯವೆಂದು ಬಿನ್ನವಿಸಿದೆನು ಸುರಪತಿಗೆ ೧೦

ಈ ರಥವನೇ ಹೂಡಿಸಿದೆನೀ
ಸಾರಥಿಯ ಬೆಸಸಿದೆನು ಸುರ ಪರಿ
ವಾರ ನೆರೆದುದನೆಣಿಸಲಳವೇ ಕೋಟಿ ಜಿಹ್ವೆಯಲಿ
ವಾರಣದ ಹಯ ರಥ ಪದಾತಿಯ
ಭಾರಣೆಗೆ ದೆಸೆ ನೆರೆಯದಿಂದ್ರನ
ವೀರ ಭಟರೆನ್ನೊಡನೆ ನೆರೆದುದು ರಾಯ ಕೇಳೆಂದ ೧೧

ಹೊಲಬಿಗರು ಹರಿದರು ಸುರೇಂದ್ರನ
ದಳದ ಮಾನ್ಯರ ಸನ್ನೆಯಲಿ ದಿಗು
ವಳಯದಗಲದೊಳಿಪ ಲಲಿತಚ್ಛತ್ರ ಚಮರಗಳ
ಜಲಧಿ ಜಲಧಿಯ ಪಳಚಲಗಿದ
ವ್ವಳಿಪ ವಾದ್ಯ ಧ್ವನಿಯ ಡಾವರ
ಸೆಳೆದುದಸುರರ ಧುರದ ಧೈರ್ಯವನರಸ ಕೇಳೆಂದ ೧೨

ಆಳು ನಡೆದುದು ಮುಂಗುಡಿಯ ಹರಿ
ಧಾಳಿ ನೂಕಿ ಹಿರಣ್ಯ ನಗರಿಯ
ಮೂಲೆಗೈದಿತು ಹೊಯ್ದುರಲ್ಲಿಯ ಬಿನುಗು ಬಿಚ್ಚಟೆಯ
ಸೂಳವಿಸಿದವು ಸನ್ನೆಯಲಿ ವಿ
ಸ್ಸಾಳ ದನುಜ ಪುರೋಪಕಂಠದ
ಕೂಲವತಿಗಳ ತೀರದಲಿ ಬಿಡಿಸಿದೆನು ಪಾಳೆಯವ ೧೩

ಅರಿಯದಾ ಪಟ್ಟಣವಿದೇನೋ
ಹೊರಗೆ ಗಜಬಜವೆನೆ ಸುಪರ್ವರ
ಕುರುಹುಗಳನರಿದಮರರಿಪುಗಳು ಹರಿದರರಮನೆಗೆ
ಬಿರುನಗೆಯ ಸುಮ್ಮಾನದುಬ್ಬಿನ
ನೆರೆ ನಗೆಯ ನಯನಾಂಬುಗಳ ಖಳ
ನೆರಗಲತಿ ಸುಮ್ಮಾನವೇನೆಂದಸುರ ಬೆಸಗೊಂಡ ೧೪

ಜೀಯ ಬಲೆಗಳ ತೆಗೆಸು ನಡೆ ನಿ
ರ್ದಾಯದಲಿ ನಿಮ್ಮಡಿಯ ಬೇಟೆಗೆ
ರಾಯ ಮೃಗವೈತಂದವಿವೆ ನಗರೋಪಕಂಠದಲಿ
ಹೋಯಿತಸುರರ ಕೈಯ ಹೊಸದಿರು
ಪಾಯ ಪಾಯವಧಾರೆನಲು ಖಳ
ರಾಯ ಕೇಳುತ ಮೃಗವದಾವುದೆನುತ್ತ ಬೆಸಗೊಂಡ ೧೫

ಜೋಡಿಸಿದನಮರೇಂದ್ರನಮರರ
ವೇಡೆಯಾಯ್ತು ಹಿರಣ್ಯ ನಗರಿಗೆ
ಗಾಢ ಬರಲದೆ ಬಂದು ವರುಣ ಯಮಾಗ್ನಿ ವಾಯುಗಳು
ರೂಢಿಗಚ್ಚರಿಯಾಯ್ತಲಾ ಪರಿ
ಗೂಢ ಮೃಗಗಣವಿಲ್ಲವಿದೆ ನಿ
ರ್ಮೂಢರನು ಹಿಡಿತರಿಸುಯೆಂದನು ದೂತನೊಡೆಯಂಗೆ ೧೬

ಇವನ ಹೊಯ್ ಕಟವಾಯ ಕೊಯ್ ತ
ಪ್ಪುವನೆ ಸುರಪತಿ ಶಿವಶಿವಾ ಸುರ
ರವಗಡಿಸುವರೆ ವೇಡೆ ಗಡ ಹೈರಣ್ಯ ನಗರಿಯಲಿ
ಇವನ ಸೀಳೆನೆ ಹೊರಗೆ ಸುರ ಸೈ
ನ್ಯವನು ಸೀಳಿದು ಬಳಿಕ ನೀ ನೀ
ನ್ನವನ ಮನವೊಲಿವಂತೆ ಮಾಡೆನೆ ಖಳನು ಖತಿಗೊಂಡ ೧೭

ಬಂದನೇ ಸುರರಾಯನಕಟಕಟೈ
ತಂದು ಮಂತ್ರಿತೆ ದಿವಿಜಗಣ ತರು
ಣೇಂದುಧರನೇ ತರಿಸಿದನೊ ಶಿವಶಿವ ವಿಶೇಷವಲ
ಇಂದಿನಲಿ ಕಡೆ ತನಗೆ ಮೇಣು ಪು
ರಂದರನು ನಿರ್ನಾಮನೈಸಲೆ
ಯೆಂದು ಬಿಟ್ಟನು ಚೂಣಿಯನು ಪಟುಭಟರ ಬೊಬ್ಬೆಯಲಿ ೧೮

ಧರಣಿಪತಿ ಚಿತ್ತೈಸು ವೇಲೆಯ
ಶಿರವನೊಡೆದುಬ್ಬೇಳ್ವ ಘನ ಸಾ
ಗರದವೊಲು ಪಿಡಿದೊದರಿ ಕವಿದುದು ಕೂಡೆ ವಂಕದಲಿ
ಕರಿತುರಗ ರಥವಾಜಿ ಕಾಲಾ
ಳುರವಣಿಸಿತೇನೆಂಬೆನಸುರರ
ದೊರೆಯ ಸನ್ನೆಗೆ ಸೂಳವಿಪ ನಿಸ್ಸಾಳ ರಭಸದಲಿ ೧೯

ಕವಿದುದಸುರರ ಚೂಣಿ ಬೊಬ್ಬೆಯ
ವಿವಿಧ ವಾದ್ಯಧ್ವನಿಯ ಕಹಳಾ
ರವದ ಕೋಳಾಹಳಕೆ ತುಂಬಿತು ಬಹಳ ಭೇರಿಗಳು
ರವಿಯನಾಕಾಶವ ದಿಗಂತವ
ತಿವಿದು ಕೆದರುವ ಧೂಳಿ ತಿಮಿರಾ
ರ್ಣವವಲ್ಲೈ ತ್ರೈಜಗವೆನಲು ಜೊಂಪಿಸಿದುದರಿ ಸೇನೆ ೨೦

ದಾನವರ ದಕ್ಕಡತನವನದ
ನೇನನೆಂಬೆನು ಜೀಯ ತೂಳಿದ
ವಾನೆಗಳು ತರುಬಿದವು ತೇಜಿಗಳುರುಬಿದವು ತೇರು
ಆನಲಳವೇ ಭಟರ ಶರ ಸಂ
ಧಾನವನು ಬಲುಸರಳ ಸೂಟಿಯ
ಸೋನೆಯಲಿ ಜಗ ನೆನೆಯಿತೆನೆ ಜೋಡಿಸಿತು ಖಳಸೇನೆ ೨೧

ಮುರಿದುದಮರರ ಚೂಣಿ ದಾನವ
ರುರುಬೆಗಳುಕಿತು ಸಿದ್ಧ ವಿದ್ಯಾ
ಧರ ಮಹೋರಗ ಯಕ್ಷ ರಾಕ್ಷಸ ಗುಹ್ಯಕಾದಿಗಳು
ಹೊರಗೆ ವನವೀಧಿಯಲಿ ಕಾಹಿನ
ಕುರುವದಲಿ ಗೋಪುರದೊಳೌಕಿತು
ಸುರರು ಮುರಿದರು ಮೇಲು ಕಾಳಗವಾದುದಸುರರಿಗೆ ೨೨

ಕೆಣಕಿದಸುರರು ಕೋಲುಗಟ್ಟಿತು
ಬಣಗು ಸುರರೋಸರಿಸಿ ಭಾರಾಂ
ಕಣವನೆನ್ನಿದಿರಿನಲಿ ಸುಭಟರು ಸೂಸಿ ದೆಸೆದೆಸೆಗೆ
ರಣವನದನೇನೆಂಬೆನೈ ಧಾ
ರುಣಿಪತಿಯೆ ವಿಗ್ರಹದ ವಿಸ್ತಾ
ರಣ ನಿರ್ಗುರ್ಗಣೆ ವಿಗಡಿಸಿತು ವಿಬುಧರ ವಿಡಾಯಿಗಳ ೨೩

ಬಳಿಕ ಬಿಟ್ಟನು ರಥವನೀ ಮಾ
ತಲಿ ವಿಭಾಡಿಸಿ ಹೊಕ್ಕು ಚೂಣಿಯ
ಬಲಸಮುದ್ರದ ಮಧ್ಯದಲಿ ಮುಳುಗಿತು ವರೂಥವಿದು
ಬಲದಲೆಚ್ಚೆನು ಹಿಂದು ಮುಂದಿ
ಟ್ಟಳಿಸಿದರನಿಟ್ಟೊರೆಸಿದೆನು ಮುಂ
ಕೊಳಿಸಿ ಮೇಲ್ವಾಯ್ವವರ ಮುರಿದೆನು ವಾಮ ಭಾಗದಲಿ ೨೪

ಕೆಟ್ಟುದಹಿತರ ಚೂಣಿ ರಿಪು ಜಗ
ಜಟ್ಟಿಗಳು ನುಗ್ಗಾಯ್ತು ದಿವಿಜರ
ಥಟ್ಟಿನಲಿ ಬೊಬ್ಬಾಟವಾಯ್ತು ಗಭೀರ ಭೇರಿಗಳು
ಬಿಟ್ಟ ಮಂಡೆಯಲಸುರ ಸುಭಟರು
ಕೆಟ್ಟು ಹಾಯ್ದರು ಕೂಡೆ ಹೆಣ ಸಾ
ಲಿಟ್ಟುದುರೆಯೆನಲರುಣಜಲ ನಗರೋಪಕಂಠದಲಿ ೨೫

ನೂಕಿ ದೈತ್ಯರ ಚೂಣಿಯನು ಮುರಿ
ದೌಕಿ ದುರ್ಗವ ಹೊಗಿಸಿದೆನು ಸ
ವ್ಯಾಕುಲರು ಸೂಸಿದರು ಭಯವ ನಿವಾತಕವಚರಿಗೆ
ಆಕೆವಾಳರು ಜೀಯ ನಮ್ಮ ದಿ
ವೌಕಸರ ಪರಿಯಲ್ಲ ಯುದ್ಧ
ವ್ಯಾಕರಣ ಪಾಂಡಿತ್ಯವುಂಟೆಂದೆನ್ನ ದೂರಿದರು ೨೬

ಕೇಳಿದನು ಕಡುಗೋಪದಲಿ ಸಿಡಿ
ಲೇಳಿಗೆಯಲಿದ್ದನು ಸುರೇಂದ್ರಗೆ
ಮೇಲುಗಾಳಗವೇ ಸುಪರ್ವರು ನಮ್ಮ ಸದೆವರಲೆ
ಕಾಲಗತಿಯೋ ಮೇಣ್ ಕಪರ್ದಿಯ
ಕೀಲಕವೊ ರವಿಯೊಡನೆ ತಮ ಕೈ
ಮೇಳವಿಸಿತೇ ಶಿವ ಶಿವಾಯೆನುತಸುರ ಹಲು ಮೊರೆದ ೨೭

ಭಟರ ಬರಹೇಳೋ ಸುರೇಂದ್ರನ
ಕಟಕವಿಕ್ಕಿದ ವೇಡೆಯಲಿ ಲಟ
ಕಟಿಸುತಿದೆ ದಾನವರು ಮಾನಚ್ಯುತಿಯ ಮನ್ನಿಸದೆ
ನಿಟಿಲನಯನನನೇಳಿಸುವ ಚಾ
ವಟೆಯರಾವೆಡೆ ಚದುರ ರಣ ಲಂ
ಪಟರ ಬರಹೇಳೆನುತ ಮಿಗೆ ಗರ್ಜಿಸಿದನಮರಾರಿ ೨೮

ನೆರೆದುದಸುರರು ಕಾಲಕೂಟದ
ಕರುವಿನೆರಕವೊ ಸಿಡಿಲ ದಳ್ಳುರಿ
ತಿರುಳ ದಡ್ಡಿಯೊ ವಿಲಯ ಭೈರವಸುಬ್ಬಟೆಯ ಪಡೆಯೊ
ಹರನ ನಯನ ಜ್ವಾಲೆಯವದಿರ
ಗರುಡಿಯೋ ಗಾಢಾಯ್ಲ ತೇಜದ
ದುರುಳ ದಾನವ ಭಟರು ಬಂದುದು ಕೋಟಿ ಸಂಖ್ಯೆಯಲಿ ೨೯

ನೆರೆದಿರೈ ಪರಿಭವದ ನೆಲೆಯಲಿ
ನೆರೆದಿರೈ ದುಷ್ಕೀರ್ತಿಸತಿಯಲಿ
ನೆರೆದಿರೈ ಸಲೆ ಹೊರೆದಿರೈ ದುಷ್ಕೃತಿಯಲೊಡಲುಗಳ
ಸುರರಲೇ ನೀವ್ ನಿಮ್ಮ ಹೆಂಡಿರ
ಕುರುಳ ಕೈದೊಳಸಿಂಗೆ ಕಾ
ತರಿಸುತಿದೆ ವಾಸವನೊಡನೆ ವಾಸಿಗಳ ಬಿಡಿಯೆಂದ ೩೦

ಜೀಯ ಖಾತಿಯಿದೇಕೆ ದಿವಿಜರ
ರಾಯನರಸಿಯ ನಿನ್ನ ತೊತ್ತಿರ
ಲಾಯದಲಿ ತೋರುವೆವು ತಾ ತಾ ವೀಳಯವನೆನುತ
ಹಾಯಿದರು ತಮ ತಮಗೆ ಮುಂಗುಡಿ
ದಾಯದಲಿ ಥಟ್ಟಿಸುವ ನಿಸ್ಸಾ
ಳಾಯತದ ಬಹುವಿಧದ ವಾದ್ಯದ ಲಳಿಯ ಲಗ್ಗೆಯಲಿ ೩೧

ಒಡೆದುದಿಳೆಯೆನೆ ಸಮ ವಿಷಮದುರಿ
ಗಡಲು ಶಿವ ಶಿವಯೆನೆ ನಿಹಾರದ
ದಡಿಗ ದಾನವರೈದಿ ಕವಿದುದು ಕೆದರಿ ಸುರಬಲವ
ಫಡ ಫಡಿದಿರಾಗಲಿ ಸುರೇಂದ್ರನ
ತುಡುಕು ಹೇಳಾ ಕಾಲವಿದಲಾ
ತೊಡರೆನುತ ಹೊಯ್ದುರುಬಿತಸುರರು ಸುರರ ಸಂದಣಿಯ ೩೨

ಮುರಿದುದಮರರು ಮತ್ತೆ ಬೊಬ್ಬಿರಿ
ದುರುಬಿದೆನು ಹೆಸರೆನಿಸಿದಸುರರ
ತರಿದೆನದರೊಳು ಕೋಟಿ ಸಂಖ್ಯೆಯನೈಂದ್ರ ಬಾಣದಲಿ
ಹರಿದುದಮರಾರಿಗಳು ಕೋಟಿಯು
ಹೊರಗೆ ಸುರಬಲವೌಕಿ ಬಿಟ್ಟುದು
ತುರುಗಿತಮರರು ಖಳನ ದುರ್ಗದ ತುದಿಯ ತೆನೆಗಳಲಿ ೩೩

ಎಲೆಲೆ ಸುರಪತಿಯಾಳು ಕೋಟಿಯು
ನಿಳಿವುತದೆ ನಡೆಯೆನುತ ದಾನವ
ರುಲಿದು ಕವಿದುದು ಖಾತಿಯಲಿ ಮಿಗೆ ಭಾಷೆಗಳ ಕೊಡುತ
ತಲೆಯ ಹೊಯ್ದಡೆಗೆಡಹು ಸುರಪನ
ಬಲನೆಯುರ ಮುಂದಣ ವಿಕಾರಿಗ
ಳೆಲವೊ ಸರಿಯೋ ಪೂತು ಮಝಯೆನುತೈದಿದರು ಭಟರು ೩೪

ಏನನೆಂಬೆನು ಜೀಯ ಬಳಿಕಾ
ದಾನವಾಧಿಪರುಬ್ಬೆಯನು ಸು
ಮ್ಮಾನವನು ತರಹರಿಸಲಳವೇ ಖಳರ ಗಲ್ಲಣೆಯು
ವೈನತೇಯನ ಪಕ್ಷಗತ ಪವ
ಮಾನನಂತಿರೆ ಭಟರ ಸುಯ್ಲಿನ
ಲಾ ನಿರೂಢಿಯ ಸುರರು ಹಾರಿತು ಸೂಸಿ ದೆಸೆದೆಸೆಗೆ ೩೫

ತೋರು ತೋರಮರೇಂದ್ರನಾವೆಡೆ
ತೋರಿಸೈರಾವತವದೆತ್ತಲು
ತೋರಿಸುಚ್ಚೈಃಶ್ರವವನೆಲ್ಲಿಹರಗ್ನಿ ಯಮ ಗಿಮರು
ತೋರಿರೈ ಕೈಗುಣವನಸುರರ
ಗಾರುಗೆದರಿದ ಗರ್ವಿತರ ಮೈ
ದೋರ ಹೇಳಾ ಕಾಣಬಹುದೆನುತುರುಬಿದರು ಭಟರು ೩೬

ಕರೆದರವದಿರು ಕಲ್ಪಮೇಘದ
ಬಿರುವಳೆಯವೊಲು ಸರಳನನಿತುವ
ತರಿಸಿ ತೆತ್ತಿಸಿದೆನು ತದಂಗೋಪಾಂಗದಲಿ ಶರವ
ಅರಿಯರೆನ್ನನು ಶಕ್ರನೆಂದೇ
ತರುಬಿ ದಿಙ್ಮಂಡಲವ ಮುಸುಕಿದ
ರಿರಿತಕಂಜದ ದಿಟ್ಟನಾವನು ಸುರರ ಥಟ್ಟಿನಲಿ ೩೭

ಝುಗಝುಗಿಪ ಬಾಣಾಗ್ನಿ ಭುಗುಭುಗು
ಭುಗಿಲೆನಲು ದಿವ್ಯಾಸ್ತ್ರ ತತಿಯಲಿ
ಹೊಗೆಯ ತೋರಿಸಿದೆನು ಚತುರ್ದಶ ಭುವನ ಭವನದಲಿ
ವಿಗಡರದ ಲೆಕ್ಕಿಸದೆ ಲೋಟಿಸಿ
ಮುಗುಚಿದರು ಮದ್ಬಾಣ ಮಹಿಮೆಯ
ನೊಗಡಿಸಿತು ಕಾಲಾಗ್ನಿ ಕಾಲಾಂತಕರಿಗಾ ಸಮರ ೩೮

ದೊರೆಗಳೇರಿತು ರಥ ತುರಂಗಮ
ಕರಿಗಳಲಿ ಕಾಲಾಳ ಬಿಂಕವ
ನರಸ ಬಣ್ಣಿಸಲರಿಯೆನಾಸುರ ಕರ್ಮ ಕಲಹವಲೆ
ಸರಿಗರೆದ್ದುದು ಮೂರು ಕೋಟಿಯು
ಸುರರು ಸರಿಗಳಲಿಟ್ಟರಶನಿಯ
ಶರದಲೆಡೆಯಲಿ ತರುಬಿದರು ಕೈ ಸೋತುದೆನಗೆಂದ ೩೯

ಲಟಕಟಿಸುವಾ ಮೂರು ಕೋಟಿಯ
ಭಟರು ಕರೆದರು ಕಲುವಳೆಯನು
ಬ್ಬಟೆಯನದನೇನೆಂಬೆನವದಿರ ಸಮರ ಸಂಭ್ರಮವ
ಕಂಟಲ ಕದನದೊಳೊದಗಿತದು ಕಲು
ಗುಂಟಿಗ ಶರ ಶತಕೋಟಿಯಲಿ ಪಡಿ
ಭಟಬಲವ ಬೆದರಿಸಿದೆ ಚಿತ್ತೈಸೆಂದನಾ ಪಾರ್ಥ ೪೦

ತೆರಳದವದಿರು ಹೂಡಿದರು ದ
ಳ್ಳುರಿಯ ಧಾರೆಯು ಪಾವಕಾಸ್ತ್ರವ
ನರಸ ಹೊಗೆದುದು ಭುವನ ಹೊಯ್ದುದು ಝಳ ಜಗತ್ರಯುವ
ಸರಕುದೆಗೆದುದು ಸತ್ಯಲೋಕಕೆ
ತರತರದ ಜಗವಿಂದ್ರಸಾರಥಿ
ಜರಿದು ಜವಗುಂದಿದನು ಜಾಡಿಸುವನಲನುಬ್ಬೆಯಲಿ ೪೧

ಸಾರಥಿಯ ಸಂತೈಸಿ ತೇರಿನ
ವಾರುವಂಗಳ ನೇಣನೋಜೆಯೊ
ಳೋರಣಿಸಿ ಸಂವರಿಸಿ ರಥವನು ವರುಣ ಬಾಣದಲಿ
ವಾರಿಧಿಯ ಕೆದರಿದೆನು ಕೆಟ್ಟವು
ಭೂರಿಗಿಡಿಗಳು ಮಾರುತನ ಕೈ
ವಾರ ಕುಂದಿದುದಸುರ ಮುಖದನಲಾಸ್ತ್ರ ಪರಿಹರಿಸಿ ೪೨

ಅವರು ಮಗುಳೆಚ್ಚರು ಶಿಲೀಮುಖ
ದವಯವದೊಳುಬ್ಬೆದ್ದು ಗಿರಿಗಳು
ಕವಿಯೆ ಕಡಿದೊಟ್ಟಿದೆನು ಭಾರಿಯ ವಜ್ರಬಾಣದಲಿ
ಅವರು ತಿಮಿರಾಸ್ತ್ರದಲಿ ಕೆತ್ತರು
ಭುವನ ನಯನದ ಕದವನಾಗಳೆ
ರವಿಯ ಶರದಲಿ ಮುರಿದೆನಗುಳಿಯನರಸ ಕೇಳೆಂದ ೪೩

ಬಳಿಕ ಸುರಿದರು ಹಾವುಗಳ ಹೆ
ಮ್ಮಳೆಯನಲ್ಲಿಗೆ ಗರುಡ ಬಾಣವ
ಸುಳಿಸಿದೆನು ಬಳಿಕಾದುರ್ಧಗ್ರಾಸವಾ ಶರಕೆ
ಉಲಿದು ದನುಜರು ಮತ್ತೆ ಕೆಂಡದ
ಮಳೆಯ ಕರೆದರು ಮರಳಿ ಜಲಧಿಯ
ತುಳುಕಿದೆನು ತೊಡಕಾಯ್ತು ಸಾರಥಿ ಮತ್ತೆ ಬಸವಳಿದ ೪೪

ಸಾರಥಿತ್ವದ ಕೈಮೆ ತತ್ಪ್ರತಿ
ಕಾರ ಶರ ಸಂಧಾನವೆರಡರ
ಭಾರ ಬಿದ್ದುದು ಮೇಲೆ ದನುಜರ ಮೂರು ಕೋಟಿಯದು
ಧೀರರಾತ್ಮಸ್ತುತಿಗೆ ನಾಚದ
ರಾರು ಜೀಯ ಮಹಾಹವದ ವಿ
ಸ್ತಾರವನು ಮಾತಲಿಯ ಕೈಯಲಿ ಚಿತ್ತವಿಸಿಯೆಂದ ೪೫

ತೊಡಚಿದೆನು ಬೊಮ್ಮಾಸ್ತ್ರವನು ಹುರಿ
ಯೊಡೆದುದಸುರರು ಮಲೆತವರನಿ
ಕ್ಕಡಿಯ ಮಾಡಿತು ಬಂದುದಳಿವು ನಿವಾತಕವಚರಿಗೆ
ಕಡುಹಿನಿಂದಾಗ್ನೇಯ ವಾರುಣ
ದಡಬಳಿಗರನು ಬಾಚಿದವು ಬರ
ಸಿಡಿಲ ಸೆರೆ ಬಿಟ್ಟಂತೆ ಕಳಚಿದವಸುರ ಬಲದಸುವ ೪೬

ಕಾಳ ದನುಜರು ಮೂರು ಕೋಟಿಯೊ
ಳಾಳುಳಿಯದಕ್ಕಾಡಿತಮರರ
ಸೂಳೆಯರ ಸೆರೆ ಬಿಟ್ಟುವರಿ ನಗರೋಪಕಂಠದಲಿ
ಧೂಳಿಪಟವಾಯಿತು ಹಿರಣ್ಯ ಪು
ರಾಳಪುದ ನೆಲೆಗಟ್ಟು ಮರಳಿದು
ಕಾಲಕೇಯರ ಪುರಕೆ ಬಂದೆನು ರಾಯ ಕೇಳೆಂದ ೪೭

ಕೆರಳಿತಲ್ಲಿ ನಿವಾತಕವಚರ
ಮರಣ ವಾರ್ತೆಯು ಕೇಳಿದಸುರರು
ಪುರದ ಬಾಹೆಯೊಳಡ್ಡಹಾಯ್ದರು ತರುಬಿದರು ರಥವ
ಅರಸ ಚಿತ್ತೈಸವದಿರಲಿ ಪರಿ
ಪರಿಯ ಮಾಯಾರಚನೆ ರಂಜಿಸಿ
ತೆರಡು ಸಾವಿರ ಮಡಿಗೆ ಮಿಗಿಲು ನಿವಾತಕವಚರಿಗೆ ೪೮

ಬೀಸಿದರು ಬಿರುಗಾಳಿಯಾಗಿ ಮ
ಹಾ ಸಮುದ್ರದ ನೂಕು ತೆರೆಯಲಿ
ಬೇಸರಿಸಿದರು ಹರಿದರವನಿಯಲಗ್ನಿ ರೂಪಾಗಿ
ಆಸುರದ ತಮವಾಗಿ ರವಿಶತ
ದಾಸರಿನ ಬಿಸಿಲಾಗಿ ಮಾಯಾ
ಭ್ಯಾಸಿಗಳು ಮೋಹಿಸುವರದನೇ ಬಣ್ಣಿಸುವೆನೆಂದ ೪೯

ಘೋರತರವದು ಬಳಿಕ ದುಷ್ಪ್ರತಿ
ಕಾರವಿತರರಿಗಿಂದುಮೌಳಿಯ
ಸಾರತರ ಕೃಪೆಯಾಯ್ತಲೇ ಸರಹಸ್ಯ ಸಾಂಗದಲಿ
ಬಾರಿಸಿದುದಾವಂಗದಲಿ ಮಾ
ಯಾ ರಚನೆಯಾ ವಿಧದಲಾ ಮಾ
ಯಾ ರಚನೆಯನು ಸೀಳಿ ಬಿಸುಟೆನು ಶಿಲ್ಪದಲಿ ಖಳರ ೫೦

ಮುರಿದುದಸುರರ ಮಾಯೆ ಕಾಹಿನೊ
ಳೆರೆದ ರಸದವೊಲವರು ನಿಜದಲಿ
ತರುಬಿ ನಿಂದರು ತೂಳಿದರು ಗಜಹಯ ರಥೌಘದಲಿ
ತರಿದವುಗಿದವು ತುಂಡಿಸಿದವಗಿ
ದೆರಗಿದವು ಸೀಳಿದವು ಕೊಯ್ದವು
ಕೊರೆದು ಕುಪ್ಪಳಿಸಿದವು ನಿಮಿಷಕೆ ಶರವರಿವ್ರಜವ ೫೧

ಜೀಯ ವಿಗಡ ಬ್ರಹ್ಮಶರವಿಂ
ದ್ರಾಯುಧದ ಮುಂಗುಡಿಯಲಿರಿದುದು
ಮಾಯಕಾರರ ಮೋಹರವನುಬ್ಬಟೆ ಚತುರ್ಬಲವ
ಹೋಯಿತಸುರರ ಸೇನೆ ಸರಿದುದು
ನಾಯಕರು ನಾನಾ ದಿಗಂತ
ಸ್ಥಾಯಿಗಳು ಸಗ್ಗಾದಿ ಭೋಗಕೆ ಭೂಪ ಕೇಳೆಂದ ೫೨

ಕಡುಹುವಗ್ಗದ ಕಾಲಕೇಯರ
ಗಡಣವಡಗಿತು ಸುರರ ಬಲುಸೆರೆ
ಬಿಡಿಸಿದೆವು ಬಳಿಕಾಯ್ತು ಕಡುಸುಮ್ಮಾನ ಸುರಕುಲಕೆ
ಒಡೆದುದಿಳೆಯೆನೆ ಬಾಹುವಿನ ಬಿರು
ನುಡಿಯ ಕೈಗಳ ತುದಿವೆರಳ ಬೊ
ಬ್ಬಿಡಿಕೆಗಳ ಸುರಭಟರು ಹರಿದರು ಮುಂದೆ ಸುರಪುರಕೆ ೫೩

ಕಟ್ಟು ಗುಡಿಯನು ಖೋಡಿಯೇ ಜಗ
ಜಟ್ಟಿಗಳು ನುಗ್ಗಾಯ್ತಲೇ ನೀ
ನಟ್ಟ ಸಸಿ ಸುರಕುಜವಲೇ ಕೊಡವೇ ಮನೋರಥವ
ಕೆಟ್ಟುದಹಿತ ನಿವಾತಕವಚರ
ಥಟ್ಟು ಹುಡಿ ಹುಡಿಯಾಯ್ತು ದನುಜರ
ಹುಟ್ಟು ಮುರಿದುದು ಜೀಯ ಚಿತ್ತೈಸೆಂದರಿಂದ್ರಂಗೆ ೫೪

ಕಾಲಕೇಯರ ನಗರಿಯಲಿ ದು
ವ್ವಾಳಿಸಿತಲೇ ಮೃತ್ಯು ದಿವಿಜರ
ಸೂಳೆಯರು ಸೆರೆ ಬಿಟ್ಟು ಬಂದರು ಯಕ್ಷ ಕಿನ್ನರರ
ಕಾಲ ಸಂಕಲೆ ಕಡಿದವಾ ಖಳ
ರೂಗಳಿಗಕೆ ಕಡೆಯಾಯ್ತು ಸುರಪುರ
ದಾಳುವೇರಿಯ ಕಾಹು ತೆಗೆಯಲಿಯೆಂದರಾ ಚರರು ೫೫

ಪುರದ ಬಾಹೆಯ ಕೋರಡಿಯ ಸಂ
ವರಣೆ ತೆಗೆಯಲಿ ನಿರ್ಭಯದಿ ಸಂ
ಚರಿಸುವುದು ನಂದನದೊಳಗೆ ನಿಮ್ಮಡಿಯ ರಾಣಿಯರು
ತರತರದ ಕೊತ್ತಳದ ಕಾಹಿನ
ಸುರಭಟರು ಸುಖನಿದ್ರೈಗೈಯಲಿ
ನಿರುತ ನಿಜನಿಳಯದೊಳಗೆಂದುದು ಸುರಜನವ್ರಾತ ೫೬

ಕೇಳಿದನು ಹರುಷಾಶ್ರು ಹೊದಿಸಿದ
ವಾಲಿಗಳ ಸಾವಿರವನುಬ್ಬಿದ
ಮೇಲುಮದದ ಸರೋಮ ಪುಳಕದ ಸರ್ವಸೌಖ್ಯದಲಿ
ಬಾಲೆಯರ ಬರಹೇಳು ರತುನ ನಿ
ವಾಳಿಗಳ ತರಹೇಳೆನುತ ಸುರ
ಮೌಳಿಮಂಡಿತಚರಣನೆದ್ದನು ಬಂದನಿದಿರಾಗಿ ೫೭

ಕವಿದುದಮರವ್ರಾತ ಕಾಂತಾ
ನಿವಹ ಹೊರವಂಟುದು ಸುರೇಂದ್ರನ
ಭವನದಲಿ ಗುಡಿ ನೆಗಹಿತಮರಾವತಿಯ ಚೌಕದಲಿ
ತವತವಗೆ ತನಿವರಿವ ಜನದು
ತ್ಸವವನದನೇನೆಂಬೆನಂದಿನ
ದಿವಸದೊಸಗೆಯನಮರ ಲೋಕದೊಳರಸ ಕೇಳೆಂದ ೫೮

ಇದಿರು ಬಂದನು ಪದಯುಗದಲೆರ
ಗಿದರೆ ಬಿಗಿದಪ್ಪಿದನು ಸುಮ್ಮಾ
ನದ ಸಗಾಢವನೇನನೆಂಬೆನು ಸಾವಿರಾಲಿಗಳ
ಹೊದರಿನಲಿ ಹೊದಿಸಿದನು ಏಗೆ ನಾ
ದಿದನು ಹರುಷಾಶ್ರುಗಳಲೆನ್ನ
ಭ್ಯುದಯವೇ ನಿಮ್ಮಡಿಯ ಕರುಣ ಕಟಾಕ್ಷ ಕೃಪೆಯೆಂದ ೫೯

ಸುರರು ಕೊಂಡಾಡಿದರು ಸುರಮುನಿ
ವರರ ಪರಮಾಶೀರ್ವಚೋ ವಿ
ಸ್ತರಕೆ ಫಲವಿದೆಲಾ ಭವತ್ಕರುಣಾಂಬಕಾಲೋಕ
ಅರಿಸುಭಟ ಸಂತೋಷಮಯ ಸಾ
ಗರವ ಸುರಿಯವೆ ಸರಳು ವಡಬ
ಸ್ಫುರಣ ಮೇಘಜ್ವಾಲೆ ಜಾಲ ಕರಾಳ ಜಿಹ್ವೆಯಲಿ ೬೦

ಲೇಸು ಮಾಡಿದೆ ನಾಕವನು ಖಳ
ರೀಸು ದಿವಸ ವಿಭಾಡಿಸಿದರೆ ಸು
ರೇಶನಾಪತ್ತಾಪ ನಿರ್ವಾಪಣವ ರಚಿಸಿದೆಲ
ಈಸು ಪುಣ್ಯೋದಯಕೆ ಪೂರ್ವ ಮ
ಹೀತಕುಲ ನೋಂತುದುದುಯೆನುತ ಸಂ
ತೋಷಮಯ ಜಲಧಿಯಲಿ ತೇಂಕಾಡಿದನು ಯಮಸೂನು ೬೧

ಹೊಗಳಿ ನಿಲ್ಲದು ಜಿಹ್ವೆ ತೆಕ್ಕೆಯ
ಸೊಗಸಿನಲಿ ಮೈ ದಣಿಯದೀಕ್ಷಣ
ಯುಗಳ ಜೀಯುದು ನೋಡಿ ಪಾರ್ಥನ ಮಾತ ಸವಿಸವಿದು
ತೆಗೆದು ನಿಲ್ಲದು ಕರ್ಣಯುಗ ಸುರ
ನಗರಿಯುತ್ತಮ ಗಂಧ ಭರದಲಿ
ಮುಗಿಯದರಸನ ಗಂಧವಹವವನೀಶ ಕೇಳೆಂದ ೬೨

ನೃಪನ ಮುದವನು ಭೀಮಸೇನನ
ವಿಪುಳ ಸುಮ್ಮಾನವನು ನಕುಲನ
ಚಪಲ ಮದವನು ಪುಳಕವನು ಸಹದೇವನವಯವದ
ದ್ರುಪದ ಸುತೆಯುತ್ಸವವ ಮುನಿಜನ
ದಪಗತ ಗ್ಲಾನಿಯನು ಪರಿಜನ
ದುಪಚಿತಾನಂದವನು ಬಣ್ಣಿಸಲರಿದು ತನಗೆಂದ ೬೩

ಶಿವನ ಘಾಟದ ಶರ ಚತುರ್ದಶ
ಭುವನ ಭಂಜನವಿದು ಮದೀಯಾ
ಹವಕೆ ಹೂಣಿಗನಾಯ್ತಲಾ ಹೇರಾಳ ಸುಕೃತವಿದು
ಎವಗೆ ತೋರಿಸಬೇಹುದೀ ಶಾಂ
ಭವ ಮಹಾಸ್ತ್ರ ಪ್ರೌಢಕೇಳೀ
ವಿವರಣವ ಕಾಂಬರ್ತಿಯಾಯ್ತೆಂದನು ಧನಂಜಯಗೆ ೬೪

ಜೀಯ ನಿಮ್ಮರ್ತಿಯನು ಶಂಭುವಿ
ನಾಯುಧದಲೇ ಸಲಿಸಿದಪೆನಾ
ಗ್ನೇಯ ವಾರುಣವೈಂದ್ರ ಕೌಬೇರಾಸ್ತ್ರ ಕೌಶಲವ
ಆಯತವ ತೋರಿಸುವೆನೀಗಳ
ನಾಯತವು ರವಿ ತುರಗ ರಾಜಿಗೆ
ಲಾಯ ನೀಡಿತು ಪಶ್ಚಿಮಾಶಾ ಗಿರಿಯ ತಪ್ಪಲಲಿ ೬೫

ಅರಸ ಕಳುಹಿದನಿಂದ್ರ ಸೂತನ
ನರಮನೆಗೆ ಬಂದನು ಧನಂಜಯ
ವೆರಸಿ ಪರ್ಣದ ಚೌಕಿಗೆಯಲಿ ಮುನೀಂದ್ರ ಮೇಳದಲಿ
ಅರಸಿ ಬಣ್ಣದ ಸೊಡರ ಬಲಿದಳು
ಹರಸಿದರು ಮುನಿ ವಧುಗಳಕ್ಷತೆ
ವೆರಸಿ ಗದುಗಿನ ವೀರ ನಾರಾಯಣನ ಮೈದುನನ ೬೬

ಹದಿಮೂರನೆಯ ಸಂಧಿ

ಸೂ. ಅಡವಿಯಲಿ ಫಣಿಭೋಗದಲಿ ಬಿಗಿ
ವಡೆದು ಬಳಲಿದ ಭೀಮಸೇನನ
ಬಿಡಿಸಿದನು ಯಮಸೂನು ಧರ್ಮಕಥಾ ಪ್ರಸಂಗದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಪಾಶುಪತಾಸ್ತ್ರ ವೇದದ
ಪಾಳಿಯುಚ್ಚರಣೆಯಲಿ ತತ್ಪ್ರಣವ ಸ್ವರೂಪವೆನೆ
ಮೇಳವಿಸಿತರುಣಾಂಶು ಪೂರ್ವದಿ
ಶಾ ಲತಾಂಗಿಯ ಮಂಡನೋಚಿತ
ಮೌಳಿಮಾಣಿಕವೆನಲು ಮೆರೆದುದು ಬಿಂಬ ದಿನಮಣಿಯ ೧

ಅರಸನುಪ್ಪವಡಿಸಿದನೆದ್ದನು
ವರ ವೃಕೋದರನರ್ಜುನನ ದೃಗು
ಸರಸಿರುಹವರಳಿದವು ಮಾದ್ರೀಸುತರು ಮೈಮುರಿದು
ಹರಿಯ ನೆನೆದರು ನಿದ್ರೆ ತಿಳಿದುದು
ಪರಿಜನಕೆ ಮುನಿನಿಕರವೆದ್ದುದು
ತರಣಿ ಸಂಧ್ಯಾಸಮಯ ಸತ್ಕೃತಿ ಜಪ ಸಮಾಧಿಯಲಿ ೨

ಮುನಿಜನಕೆ ಕೈಮುಗಿದು ಯಮ ನಂ
ದನನ ಚರಣಕ್ಕೆರಗಿ ಶಂಭುವ
ನೆನೆದು ಗವಸಣಿಗೆಯಲಿ ತೆಗೆದನು ಗರುವ ಗಾಂಡಿವವ
ಜನಪ ಕೇಳೈ ಕೊಪ್ಪಿನಲಿ ಸಿಂ
ಜಿನಿಯ ಸಿಕ್ಕಿದನಳ್ಳಿರಿದು ಮಾ
ರ್ದನಿ ದಿಗಂತರವೊದರಲೊದರಿಸಿದನು ಮಹಾ ಧನುವ ೩

ಘೋರತರ ಲಯಭೈರವನ ಹುಂ
ಕಾರವೋ ಸಂಹಾರ ಸುತಿಯೋಂ
ಕಾರವೋ ಕಲ್ಪಾಂತ ತಾಂಡವ ವೇದಪಂಡಿತನ
ಆರುಭಟೆಯೋ ಮೇಣ್ ತ್ರಿವಿಕ್ರಮ
ವೀರಪದಭಿನ್ನಾಬ್ಜಜಾಂಡ ಕ
ಠೋರ ರವವೆನೆ ಮೆರೆದುದರ್ಜುನ ಚಾಪ ಟಂಕಾರ ೪

ಏನಿದದ್ಭುತ ರವವೆನುತ ವೈ
ಮಾನಿಕರು ನಡನಡುಗಿದರು ಗ
ರ್ವಾನುನಯ ಗತವಾಯ್ತಲೇ ಸುರಪುರದ ಗರುವರಿಗೆ
ಆ ನಿರುತಿ ಯಮ ವರುಣ ವಾಯು ಕೃ
ಶಾನು ಧನದ ಮಹೇಶಕೃತರ
ಸೇನೆಯಲಿ ಹೊರವಂಟನಂಬರಗತಿಯಲಮರೇಂದ್ರ ೫

ನೆರೆದುದಭ್ರದೊಳಮರ ಗಣ ಮುನಿ
ವರುಣ ಸಹಿತ ಯುಧಿಷ್ಠಿರಾದಿಗ
ಳಿರದುಪಂಕವ ಹೊದ್ದಿ ಪರು ಹರಿತಸಿಯನೆಡಬಲವ
ತರುನಿಕರ ಗಿರಿನಿಚಯವಲ್ಲಿಯ
ಪರಿವಾರವ ತರುಚರದು ನಸಗಿದ
ನರನ ಬಿಣ್ಣಸಳಿಸವೆ ನರನ ಮಹಾಸ್ತ್ರ ನಾಟಕವ ೬

ಮೊದಲೊಳನಲ ಮಹಾಸ್ತ್ರವನು ಹೂ
ಡಿದನು ಹೊಗೆದುದು ಭುವನ ದಿಕ್ಕುಗ
ಳೊದರಿದವು ಪಂಟಿಸಿತು ರವಿರಥ ಗಗನ ಮಾರ್ಗದಲಿ
ಉದಧಿ ಉದಧಿಯ ತೆರೆಯ ಗಂಟಿ
ಕ್ಕಿದವು ಹರ ಹರ ಹೇಳಬಾರದ
ಹೊದರು ಹೊದಿಸಿತು ಕೀಳುಮೇಲಿನ ಜಗದ ಹಂತಿಗಳ ೭

ಅಹಹ ಬೆಂದುದು ಭುವನವಿದು ವಿ
ಗ್ರಹದ ಸಮಯವೆ ತಮ್ಮ ಲೀಲೆಗೆ
ಕುಹಕಮತಿಗಳು ತಂದರೈ ತ್ರೈಜಗಕೆ ತಲ್ಲಣವ
ರಹವಿದೇನೆಂದಭ್ರ ತಳದಿಂ
ಮಹಿಗೆ ಬಂದನು ದೇವಮುನಿ ದು
ಸ್ಸಹವಿದೇನೈ ಪಾರ್ಥ ಹೋ ಹೋ ಸಾಕು ಸಾಕೆಂದ ೮

ತೊಡಚದಿರು ಬೊಮ್ಮಾಸ್ತ್ರವಿದು ಬಾ
ಯ್ಗಡಿಯನಿದು ನಿಮಿಷದಲಿ ಭುವನವ
ನುಡುಗಿ ತಣಿಯದಿದೊಂದು ಮತ್ತೀ ಶಾಂಭವಾದಿಗಳ
ತೊಡಚಿದೊಡೆ ಸಂಹಾರ ಸಮಯವ
ನೆಡೆಯಲನುಭವಿಸುವುದು ಜಗವಿದು
ಕೆಡಿಸದಿರು ಕೆಡಿಸದಿರು ತೆಗೆ ತೆಗೆಯೆಂದನಾ ಮುನಿಪ ೯

ಲಕ್ಷ್ಯವಿಲ್ಲದೆ ತೊಡಚುವರೆ ನಿ
ರ್ಲಕ್ಷ್ಯಶರವೇ ನೀನುಪಾರ್ಜಿಸಿ
ದಕ್ಷಯವಲೇ ಪಾರ್ಥ ಗಣನೆಯ ಗುತ್ತಿನಂಬುಗಳೆ
ಶಿಕ್ಷೆರಕ್ಷೆಗೆ ಬಾಣವೊಂದೇ
ಲಕ್ಷ್ಯವಿದು ನೀನರಿಯದುದಕೆ ವಿ
ಲಕ್ಷ್ಯನಾದೆನು ನಾನೆನುತ ಮುನಿ ನುಡಿದನರ್ಜುನಗೆ ೧೦

ಪರಮಹಾಸ್ತ್ರಾದಿಗಳ ಲೀಲೆಯ
ನರಸ ನೋಡಲು ಬೇಹುದಾದರೆ
ಬೆರಸುವುದು ತತ್ಸಮಯ ಸೈರಿಸು ನೃಪನ ಕಣುಮನವ
ಹೊರೆವ ಹೇರಾಳದ ಮಹಾ ಸಂ
ಗರವಹುದು ಮುಂದಣ ಕಥಾ ವಿ
ಸ್ತರವ ವಿರಚಿಸಬಾರದನುಚಿತವೆಂದನಾ ಮುನಿಪ ೧೧

ಅರಸ ಕೇಳೈ ನಾರದನ ನುಡಿ
ಗುರುತರದಲೀ ಪಾರ್ಥನಾ ಬಿಲು
ದಿರುವ ಮಗುಳಿಳುಹಿದನು ಮುನಿಪನ ಮಾತ ಮನ್ನಿಸುತ
ಹರಿದುದಮರರ ಮೇಲೆ ನೋಡುವ
ನೆರವಿ ದಿಗುಪಾಲಕರು ನಿಜ ಮಂ
ದಿರಕೆ ಸರಿದರು ದೇವಮುನಿ ಹಾಯಿದನು ಗಗನದಲಿ ೧೨

ಇವರು ಕಾಮ್ಯಕ ಕಾನನವನನು
ಭ್ರಮಿಸಿ ಬಳಿಕಲ್ಲಿಂದ ಹೊರವಂ
ಟವಗಡೆಯ ಪರ್ವತಕೆ ಬಂದರು ಯಾಮುನಾಹ್ವಯದ
ದಿವಿಜರಿಪು ಹೈಡಿಂಬನಾ ತುದಿ
ಗವರನೇರಿಸಿದನು ತದಗ್ರದೊ
ಳವನಿಪತಿ ಕೆಲ ದಿವಸವಿದ್ದಲ್ಲಿಂದ ಹೊರವಂಟ ೧೩

ಅರಸ ಕೇಳ್ಳೈ ಕಾರ್ತಿಕೇಯನ
ವರ ಮಹಾಶ್ರಮಕ್ಕೈದಿದನು ಮುನಿ
ವರರು ಸಹಿತೊಲವಿನಲಿ ನೂಕಿದನೊಂದು ವತ್ಸರವ
ಧರಣಿಪತಿ ಬೃಹದಶ್ವನಾಶ್ರಮ
ವರಕೆ ಬಂದನು ತೀರ್ಥಸೇವಾ
ಪರಮಪಾವನಕರಣನಿರ್ದನು ಪರ್ಣಶಾಲೆಯಲಿ ೧೪

ಬಂದನೊಬ್ಬನು ಪವನಸುತನ ಪು
ಳಿಂದನಟವೀ ತಟದ ಖಗಮೃಗ
ವೃಂದದಿಕ್ಕೆಯ ಹಕ್ಕೆಯಾಡುಂಬೊಲದ ಸೋಹೆಗಳ
ನಿಂದ ನೆಲೆ ನಿರ್ದಾಣ ಹೆಜ್ಜೆಗ
ಳಿಂದ ಭೇದಿಸಿ ಜೀಯ ಚಿತ್ತವಿ
ಸೆಂದು ಬಿನ್ನಹ ಮಾಡಿದನು ಕಲಿಭೀಮಸೇನಂಗೆ ೧೫

ಇದೆ ಮಹಾ ಕಾಂತಾರವತಿ ದೂ
ರದಲಿ ವೃಕ ಶಾರ್ದೂಲ ಕೇಸರಿ
ಕದಲಿ ಕಳಭ ಕ್ರೋಡ ಖಿಳಿ ಲೂಲಾಯ ಸಾರಂಗ
ಮದದ ರಹಿಯಲಿ ಮಾನಿಸರು ಸೋಂ
ಕಿದೊಡೆ ಸೆಡೆಯವು ಹೊಲನ ಹೊದರಿ
ಕ್ಕಿದವು ದೀಹದ ಹಿಂಡಿನಂತಿರೆ ಜೀಯ ಚಿತ್ತೈಸು ೧೬

ಮೇಹುಗಾಡಿನೊಳವರ ಮೈ ಮಿಗೆ
ಸೋಹಿದರೆ ಸುವ್ವಲೆಯ ಸುಬ್ಬಲೆ
ಯಾಹವದಲೇ ತೋಳ ತೆಕ್ಕೆಯ ತೋಟಿ ತೇಗುವರೆ
ತೋಹಿನಲಿ ತೂದಳಾಗಿ ಗೋರಿಯ
ಗಾಹಿನಲಿ ಗುರಿ ಗಡಬಡಿಸೆ ಬಲು
ಸಾಹಸಕಂಜುವೆವ ನೀನೇಳೆಂದನಾ ಶಬರ ೧೭

ಕಂಡ ಮೃಗ ಮೈದೆಗೆಯದಿಕ್ಕೆಯ
ಹಿಂಡು ಹೊಳಹಿನ ಹುಲಿಯ ಮೇಕೆಯ
ಮಿಂಡವಂದಿಯ ಲಾವಣಿಗೆಯ ಲುಲಾಯ ಳಾಲನೆಯ
ತೊಂಡು ಮೊಲನ ತೊಡಂಕು ನವಿಲಿನ
ಖಂಡೆಯದ ಮೊಳನೆಡದ ಖಡ್ಗದ
ಹಿಂಡುಗಳ ತೋರಿಸುವೆನೇಳೆಂದನಿಲಜಗೆ ನುಡಿದ ೧೮

ಅಂಗಚಿತ್ತವನಿತ್ತನಾ ಶಬ
ರಂಗೆ ಬಲೆಗಳ ತೆಗೆಸಿದನು ಹಸು
ರಂಗಿಯನು ತೊಟ್ಟನು ಚಡಾಳಿಸಿ ಪದದೊಳಿಕ್ಕಡವ
ಸಿಂಗ ಶರಭವನಳವಿಗೊಡಲವ
ರಂಗುಲಿಯಲಡುಪಾಯ ಲೌಡಿಯ
ಜಂಗುಳಿಯ ಜೋಡಿಸಿದನಂದು ಜವಾಯ್ಲ ಜಾಯಿಲನ ೧೯

ಮಡಿದ ಕೊಡಕೆಗಳೊಡ್ಡಿ ದುರದೊ
ಪ್ಪಿಡಿಯ ನಡುಪಿನ ಕೊಂಕಿದುಗುರಿನ
ಸಿಡುಪೊಡಲ ನಿರ್ಮಾಂಸ ಜಂಘೆಯ ಕೆಂಪಿನಾಲಿಗಳ
ಸಿಡಿಲುಗಳ ಗರ್ಜನೆಯ ಗಗನವ
ತುಡುಕುವಾಗುಳಿಕೆಗಳ ಮೊರಹಿನ
ಮಿಡುಕುಗಳ ನಾಯ್ ನೂಕಿದವು ಹಾಸದ ವಿಳಾಸದಲಿ ೨೦

ಹೆಸರ ನಾಯ್ಗಳ ಹಾಸ ಹರಿದು
ಬ್ಬಸದಲುಳಿಗದವದಿರ ಹಿಡಿಮೃಗ
ಮಸಗಿದವು ಹದವಿಲುಗಳೊದೆದವು ಹೆದೆಯ ಹರವಿನಲಿ
ನುಸುಳಿದವು ಮೊಲನುರಿಯ ಹೊಗೆಗಳ
ದೆಸೆವಿಡಿದು ಕೆದರಿದವು ಹೊಲದಲಿ
ಹಸುಬ ಹರಡೆಗಳನೇನನೆಂಬೆನು ಶಕುನ ಸೂಚಕವ ೨೧

ಬಗೆಯನವ ಶಕುನವ ಮೃಗವ್ಯದ
ಸೊಗಸಿನಲಿ ಸಿಲುಕಿದ ಮನೋ ವೃ
ತ್ತಿಗಳೊಳುಂಟೆ ವಿವೇಕ ಧರ್ಮ ವಿಚಾರ ವಿಸ್ತಾರ
ಹೊಗರೊಗುವ ಹೊಂಗರಿಯ ಬಿಲು ಸರ
ಳುಗಳ ಹೊದೆಗಳ ನಡೆದುದಡವಿಯ
ಬೆಗಡುಗೊಳಿಸುತ ಮುಂದೆ ಮುಂದೆ ಪುಳಿಂದ ಸಂದೋಹ ೨೨

ಬಂಡಿಗಳ ಬೆಳ್ಳಾರವಲೆಗಳ
ಖಂಡವಲೆಗಳ ತಡಿಕೆವಲೆಗಳ
ಗುಂಡುವಲೆಗಳ ಬೀಸುವಲೆಗಳ ಕಾಲುಗಣ್ಣಿಗಳ
ದಂಡಿವಲೆಗಳ ತೊಡಕುವಲೆಗಳ
ಹಿಂಡುವಲೆಗಳ ಮಯಣದಂಟಿನ
ಮಂಡವಿಗೆ ಬಲೆಗಳ ಕಿರಾತರು ಕೆದರಿತಗಲದಲಿ ೨೩

ಏನನೆಂಬೆನು ಜೀಯ ಹೊಕ್ಕನು
ಕಾನನವನನಿಲಜನು ಶಬರ ವಿ
ತಾನವಿಕ್ಕಿದ ವೇಡೆಗಳ ಬೆಳ್ಳಾರ ಸುತ್ತುಗಳ
ಕಾನನಪನಳಿವಿನ ಶಿಲೋಚ್ಚಯ
ಸಾನುವಿನ ಗಹ್ವರದ ಗಂಡ
ಸ್ಥಾನ ದೀರ್ಘದ್ರೋಣಿಗಳಲರಸಿದರು ಮೃಗಕುಲವ ೨೪

ಬೊಬ್ಬೆಗಳ ಪಟಹದ ಮೃದಂಗದ
ಸರ್ಬ ಲಗ್ಗೆಯ ಸೋಹಿನಲಿ ಸುಳಿ
ವಬ್ಬರಕೆ ಹಿಂಡೊಡೆದು ಹಾಯ್ದವು ಸೂಸಿದವು ದೆಸೆಗೆ
ತೆಬ್ಬಿದವು ಬೆಳ್ಳಾರವಲೆಹರಿ
ದುಬ್ಬಿ ಹಾಯ್ದೊಡೆ ವೇಡೆಯವರಿಗೆ
ಹಬ್ಬವಾಯ್ತೇನೆಂಬೆನಗಣಿತ ಮೃಗ ನಿಪಾತನವ ೨೫

ಹೊಕ್ಕು ತಿವಿದರು ಸಬಳದಲಿ ಜಡಿ
ವೆಕ್ಕಲನನಳವಿಯಲಿ ಹರಿಣವ
ನಿಕ್ಕಿದರು ನಾರಾಚದಲಿ ಸೈವರಿದು ಸೈರಿಭನ
ಸೊಕ್ಕಿದರು ಸುರಗಿಯಲಿ ಹೊದರಲಿ
ಹೊಕ್ಕು ಹುಲಿಗಳ ಕೆಣಕಿ ಖಡ್ಗದ
ಲಿಕ್ಕಡಿಯ ತೋರಿದರು ತೂರಿದರಖಿಳ ಮೃಗಕುಳವ ೨೬

ಕಳಚಿ ಹಾಸವನುಬ್ಬರಿಸಲ
ವ್ವಳಿಸಿ ಕಂಠೀರವನ ಮೋರೆಗೆ
ನಿಲುಕಿದವು ಕದುಬಿದವು ಹಾಯ್ದವು ಹಣುಗಿ ತುಡುಕಿದವು
ಸೆಳೆದವುಡಿದುಕ್ಕಳಿಸಿತೆಡ ಬಲ
ಬಳಸಿದವು ಮೆಲುಂವಾಯಿದವು ವೆ
ಗ್ಗಳಿಸಿದವು ಕುಸುಬಿದವು ಕುನ್ನಿಗಳಖಿಳ ಮೃಗಕುಲವ ೨೭

ಗಾಯವಡೆದೆಕ್ಕಲನ ರಭಸದ
ಜಾಯಿಲಂಗಳ ಗರ್ಜನೆಯ ಪೂ
ರಾಯದೇರಿನ ಕರಡಿ ಕಾಡಾನೆಗಳ ಕಳವಳದ
ನೋಯಲೊರಲುವ ಶರಭ ಸಿಂಹ ಲು
ಲಾಯ ವೃಕ ಶಾರ್ದೂಲ ಶಶ ಗೋ
ಮಾಯು ಮೊದಲಾದಖಿಳ ಮೃಗರವ ತುಂಬಿತಂಬರವ ೨೮

ಮುಳುದೊಡಕಿನೊಳು ಕೂದಲೊಂದೇ
ಸಿಲುಕಿ ನಿಂದವು ಚಮರಿಮೃಗ ಮರಿ
ಗಳಿಗೆ ಮೊಲೆಗೊಡುತಿರುಕಿನಲಿ ಹುದುಗಿದವು ಹುಲ್ಲೆಗಳು
ಎಳೆವರಿಯನಡಗಲಿಸಿ ನಿಂದವು
ಮಲೆತು ಸಿಂಹದ ಮಿಥುನ ಹಿಂಡಿನ
ಕಳಭವನು ಹಿಂದಿಕ್ಕಿ ವನಕರಿ ತೂಳಿದವು ಪಡೆಯ ೨೯

ಪಡೆ ಬೆದರೆ ಪಡಿತಳಿಸಿ ಪವನಜ
ಹಿಡಿದು ಬೀಸಿದನಾನೆಗಳನವ
ಗಡಿಸಿ ಸಿಂಹವ ಸೀಳಿದನು ಹಾಯ್ದೆತ್ತುವೆಕ್ಕಲನ
ಮಡದಲುರೆ ಗಟ್ಟಿಸಿದ ಮುಷ್ಟಿಯೊ
ಳಡಸಿ ತಿವಿದನು ಹುಲಿಯ ಕರಡಿಯ
ಕೊಡಹಿದನು ಕೊಂದನು ವನಾಂತದೊಳಖಿಳ ಮೃಗಕುಲವ ೩೦

ಈತನುರುಬೆಗೆ ಬೆದರಿತುರು ಸಂ
ಘಾತದಲಿ ಹೆಬ್ಬಂದಿಯೊಂದು ವಿ
ಘಾತದಲಿ ಹಾಯ್ದದು ಕಿರಾತ ವ್ರಜವನೊಡೆದುಳಿದು
ಈತನರೆಯಟ್ಟಿದನು ಶಬರ
ವ್ರಾತವುಳಿದುದು ಹಿಂದೆ ಭೀಮನ
ಭೀತಿಯಲಿ ಹೊಕ್ಕುದು ಮಹಾ ಗಿರಿಗಹನ ಗಹ್ವರವ ೩೧

ಮುಂಡುಹು ಸೋಂಕಿದಡುಲಿದು ಹೆಮ್ಮರ
ನುಡಿದು ಬಿದ್ದುದು ಪಾದ ಘಾತದೊ
ಳಡಿಗಡಿಗೆ ನೆಗ್ಗಿದುದು ನೆಲನುಬ್ಬರದ ಬೊಬ್ಬೆಯಲಿ
ಜಡಿದುದಬುಜಭವಾಂಡವೆನಲವ
ಗಡೆಯ ಭೀಮನ ಕಳಕಳಕೆ ಕಿವಿ
ಯೊಡೆದು ತಿಳಿದುದು ನಿದ್ರೆ ಮುರಿದಿಕ್ಕೆಯ ಮಹೋರಗನ ೩೨

ತೆಕ್ಕೆ ಸಡಲಿತು ತರಗೆಲೆಯ ಹೊದ
ರಿಕ್ಕಲಿಸೆ ಮೈ ಮುರಿಯಲನಿಲಜ
ನೆಕ್ಕತುಳದಲಿ ಮೇಲೆ ಹಾಯ್ದನು ಕಾಣದಹಿಪತಿಯ
ಸಿಕ್ಕಿದವು ಹೆದ್ದೊಡೆಗಳುರಗನ
ತೆಕ್ಕೆಯಲಿ ಡೆಂಡಣಿಸಿ ಫಣಿಪತಿ
ಡೊಕ್ಕರಕೆ ಹಬ್ಬಿದನು ಬಿಗಿದನು ಭಟನ ಪೇರುರವ ೩೩

ಭಟ ಮರಳಿ ಸಂತೈಸಿಕೊಂಡಟ
ಮಟಿಸಿ ಗದೆಯಲಿ ಹೊಯ್ದು ಬಿಗುಹಿನ
ಕಟಕವನು ಬಿಚ್ಚಿದನು ಹೆಚ್ಚಿದನೌಕಿ ಬೊಬ್ಬಿಡುತ
ಪುಟದ ಕಂತುಕದಂತೆ ಫಣಿ ಲಟ
ಕಟಿಸಲೌಕಿತು ಗಿಡಗನೆರಕೆಯ
ಪುಟದ ಗಿಳಿಯಂದದಲಿ ಗಿರಿಗಿರಿಗಂಟ್ಟಿದನು ಭೀಮ ೩೪

ಜಾಡಿಸಲು ಜಾಡಿಸಲು ಬಿಗುಹತಿ
ಗಾಢಿಸಿತು ಕೊಡಹಿದೊಡೆ ಮಿಗೆ ಮೈ
ಗೂಡಿ ಬಿಗಿದುದು ಭುಜಗವಳಯದ ಮಂದರಾದ್ರಿಯೆನೆ
ರೂಢಿಸಿದ ಭುಜಬಲದ ಸಿರಿಯ
ಕ್ಕಾಡಿತೇ ತನಗೆನುತ ಖಾಡಾ
ಖಾಡಿಯಲಿ ಕಾತರಿಸಿ ಕಳವಳಿಸಿದನು ಕಲಿಭೀಮ ೩೫

ಅರಸ ಕೇಳಿತ್ತಲು ಮಹೀಶನ
ಹೊರೆಯಲಾಯ್ತುತ್ಪಾತಶತ ನಿ
ಷ್ಠುರವಿದೇನೋ ದೈವಕೃತ ಫಲವಾವುದಿದಕೆನುತ
ಕರೆಸಿ ಧೌಮ್ಯಂಗರುಹಲಿದು ನ
ಮ್ಮರಸುಗಳಿಗಪಘಾತ ಸೂಚಕ
ವರಿದಿದರ ನಿರ್ವಾಹವೆಂದೊಡೆ ನೃಪತಿ ಚಿಂತಿಸಿದ ೩೬

ಭೀಮನಾವೆಡೆಯೆನೆ ಕಿರಾತ
ಸ್ತೋಮ ಸಹಿತ ಮೃಗವ್ಯ ಕೇಳೀ
ಕಾಮನೈದಿದನೆನಲು ನೃಪ ಹೊರವಂಟನಾಶ್ರಮವ
ಭೂಮಿಸುರರೊಡನೈದಿ ಬರೆ ಸಂ
ಗ್ರಾಮ ಧೀರನ ಹೆಜ್ಜೆವಿಡಿದು ಮ
ಹೀ ಮನೋಹರನರಸಿ ಹೊಕ್ಕನು ಘೋರ ಕಾನನವ ೩೭

ಹುದುಗಿದಗ್ಗದ ಸತ್ವ ದುಸ್ಸಹ
ಸದ ನಿರೂಢಿಯ ಸೋಸಮಯ ಗದು
ಗದಿತ ಕಂಠದ ತಳಿತ ಭಂಗದ ತಿರುಗುವಾಲಿಗಳ
ಹೆದರೆದೆಯ ಹೇರಾಳ ಶೋಕದ
ಕೆದರುಗೇಶದ ಕೆಲಕೆ ಜಾರಿದ
ಗದೆಯ ಗರುವಾಯಳಿದ ಭೀಮನ ಕಂಡನಾ ಭೂಪ ೩೮

ಅಕಟ ಹಿಂದನುಭವಿಸಿದೆನು ಕಂ
ಟಕ ಹಲವನೀ ಪರಿಯ ಬಲು ಕಂ
ಟಕ ಮಹಾ ಕರ್ದಮದೊಳದ್ದಿತೆ ವಿಧಿ ಮಹಾದೇವ
ವಿಕಟ ನಾಗಾಯುತ ಮದತ್ರಾ
ಣಕನ ಸಾಹಸವಡಗಿತೇ ವನ
ನಿಕಟ ಭುಜಗಾಟೋಪ ಶೌಳಿಯೊಳೆನುತ ಬಿಸುಸುಯ್ದ ೩೯

ಏನು ಕುಂತೀಸುತಗಪಾಯವಿ
ದೇನು ಫಣಿಬಂಧನ ವಿಧಾನವಿ
ದೇನು ನಿನಗೆ ವಿನೋದವೋ ತ್ರಾಣಾಪಜಯ ವಿಧಿಯೊ
ಏನಿದಕೆ ಕರ್ತವ್ಯ ನಮಗೀ
ಹೀನ ದೆಸೆಗೆ ನಿಮಿತ್ತ ದುಷ್ಕೃತ
ವೇನು ಶಿವ ಶಿವಯೆನುತ ನುಡಿಸಿದನನಿಲ ನಂದನನ ೪೦

ನೋಡಿದನು ಕಂದೆರೆದು ಕಂಠಕೆ
ಹೂಡಿದುರಗನ ಘೋರ ಬಂಧದ
ಗಾಢದಲಿ ನುಡಿ ನೆಗ್ಗಿ ನುಡಿದನು ಬೆರಳ ಸನ್ನೆಯಲಿ
ಖೇಡನಾದನಜಾತರಿಪು ಮಾ
ತಾಡಿಸಿದನಹಿಪತಿಯನೆಲೆ ನಾ
ಡಾಡಿಗಳ ನಾಟಕದ ಫಣಿಯಲ್ಲಾರು ನೀನೆಂದ ೪೧

ಅನಿಲಸುತನಪರಾಧಿಯೋ ನೀ
ವಿನಯ ಹೀನನೋ ವೇಣು ಪರ ಪೀ
ಡನ ವೃಥಾ ದುಷ್ಕರ್ಮ ಸಂಗ್ರಹ ಬೇಹುದೇ ನಿನಗೆ
ದನುಜನೋ ಗಂಧರ್ವನೋ ಯ
ಕ್ಷನೊ ಸರೀಸೃಪರೂಪ ದಿವಿಜೇಂ
ದ್ರನೊ ನಿಧಾನಿಸಲರಿಯೆ ನೀನಾರೆಂದನವನೀಶ ೪೨

ಕೇಳಿದನು ಫಣಿ ಭೀಮಸೇನನ
ಮೌಳಿ ತಲ್ಪದ ತಲೆಯ ಹೊಳಹಿನ
ನಾಲಗೆಯ ಚೂರಣದ ಝಡಿತೆಗೆ ಚಲಿಸುವಾಲಿಗಳ
ಮೇಲು ಮೊಗದಲಿ ನೃಪನ ನುಡಿಗಳ
ನಾಲಿಸುತ ನುಡಿದನು ಕರಾಳಾ
ಭೀಳ ದಂಷ್ಟ್ರಾಂತರ ವಿಸಂಸ್ಥುಳ ಜಿಹ್ವೆಗಳ ಜಡಿದು ೪೩

ಏನಹನು ನಿನಗೀತ ನೀನಾ
ರೇನು ನಿನ್ನಭಿಧಾನ ವಿಪ್ರನ
ಸೂನುವೋ ಕ್ಷತ್ರಿಯನೊ ವೈಶ್ಯನೊ ಶೂದ್ರಸಂಭವನೊ
ಏನು ನಿನಗೀ ವನಕೆ ಬರವು ನಿ
ದಾನವನು ಹೇಳೆನಲು ಕುಂತೀ
ಸೂನು ನುಡಿದನು ತನ್ನ ಪೂರ್ವಾಪರದ ಸಂಗತಿಯ ೪೪

ಸೋಮವಂಶದ ಪರಂಪರೆಯೊಳು
ದ್ದಾಮ ಪಾಂಡು ಕ್ಷಿತಿಪನುದಿಸಿದ
ನಾ ಮಹೀಶನ ಸುತ ಯುಧಿಷ್ಠಿರನೆಂಬುದಭಿಧಾನ
ಭೀಮನೀತನು ಪಾರ್ಥ ನಕುಲ ಸ
ನಾಮ ಸಹದೇವಾಖ್ಯ ಪಾಂಡವ
ನಾಮಧೇಯರು ನಾವೆಯೆಂದನು ಭೂಪನಾ ಫಣಿಗೆ ೪೫

ಬೀತುದಖಿಳೈಶ್ವರ್ಯ ಕಪಟ
ದ್ಯೂತದಲಿ ಕೌರವರು ಕೊಂಡರು
ಭೂತಳವನೆಮಗಾಯ್ತು ಬಳಿಕಟವೀ ಪರಿಭ್ರಮಣ
ಈತನೆನ್ನೊಡಹುಟ್ಟಿದನು ನೀ
ನೀತನನು ಬಿಡಬಹುದೆ ಬಿಡು ವಿ
ಖ್ಯಾತರಿಗೆ ಪರಪೀಡೆ ಧರ್ಮ ವಿನಾಶಕರವೆಂದ ೪೬

ಆದೊಡೆಲೆ ಧರಣೀಶ ಧರ್ಮವ
ನಾದರಿಸುವೈ ಧರ್ಮವೆಂಬುದು
ವೇದ ಮಾರ್ಗವಲೇ ಸುಧರ್ಮದ ಸಾರ ಸಂಗತಿಯ
ಕೈದುವುಳ್ಳೊಡೆ ಕಾದು ನಿನ್ನಯ
ಸೋದರನ ಬಿಡುವೆನು ಪುನಃಪರಿ
ಭೇದವನು ಬಿಸುಟೆನ್ನು ಧರ್ಮರಹಸ್ಯ ವಿಸ್ತರವ ೪೭

ಉಸುರಬಹುದೇ ಧರ್ಮತತ್ವ
ಪ್ರಸರಣವಿದೇನೆಂದು ನೀ ಶಂ
ಕಿಸಲು ವೇದಸ್ಮೃತಿಪುರಾಣತ್ರಾಣ ತುಟ್ಟಿಸದೆ
ಎಸೆವ ವಿಪ್ರರ ಮತಿಗೆ ಸಂಭಾ
ವಿಸುವ ಧರ್ಮವನರುಹುವೆನು ನೀ
ಬೆಸಗೊಳೆಂದನು ಧರ್ಮಸುತ ನಹುಷಂಗೆ ವಿನಯದಲಿ ೪೮

ಎಸೆವ ವಿಪ್ರರ ಮತಿಗೆ ಸಂಭಾ
ವಿಸುವ ಧರ್ಮ ಸ್ಥಿತಿಯನಭಿವ
ರ್ಣಿಸುವೆನೆಂದೈ ಭೂಪತಿಯೆ ಭೂದೇವಕುಲದೊಳಗೆ
ಎಸೆವ ವಿಪ್ರನದಾರು ಪರಿಶೋ
ಭಿಸುವುದೈ ಬ್ರಾಹ್ಮಣ್ಯವೇತರ
ದೆಸೆಯೊಳಿದನೇ ಮುನ್ನ ಹೇಳೆನೆ ಭೂಪನಿಂತೆಂದ ೪೯

ಉರಗ ಕೇಳ್ ಪಿತೃಮಾತೃ ವಂಶೋ
ತ್ಕರ ವಿಶುದ್ಧ ಸದಾಗ್ನಿ ಹೋತ್ರದ
ಭರದಮಸ್ವಾಧ್ಯಾಯ ಸತ್ಯವಹಿಂಸೆ ಪರಿತೋಷ
ವರ ಗುಣಂಗಳಿವಾವನಲಿ ಗೋ
ಚರಿಸಿದಾತನೆ ವಿಪ್ರನೆಂಬರು
ಹಿರಿಯರೆಂದನು ಧರ್ಮಸುತ ನಹುಷಂಗೆ ವಿನಯದಲಿ ೫೦

ಅಯಿತಿದು ಮತವಾವುದೈ ಸ್ವಾ
ಧ್ಯಾಯವೆಂಬುದದೇನು ಸತ್ಯದ
ಕಾಯವಾವುದಹಿಂಸೆ ಪರಿತೋಷಂಗಳೆಂದೇನು
ರಾಯ ಹೇಳಿವರರಿವ ನಿಜಗುಣ
ದಾಯತನವನೆನೆ ಧರ್ಮವತಿ ರಮ
ಣೀಯವೆನೆ ನಹುಷಂಗೆ ವಿವರಿಸಿದನು ಮಹೀಪಾಲ ೫೧

ನಿಯತವೀ ಶ್ರೋತ್ರಾದಿ ಪಂಚೇಂ
ದ್ರಿಯದ ನಿಗ್ರಹ ದಮವೆನಿಪುದು
ಭಯವನಿತರರಿಗಾಚರಿಸದಿಹುದೇಯಹಿಂಸೆ ಕಣ
ನಯವಿದನೆ ಚಿತ್ತೈಸು ಲೋಕ
ತ್ರಯವನೊಂದೇ ಸತ್ಯದಿಂದವೆ
ಜಯಿಸಬಹುದಾ ಸತ್ಯವುಳ್ಳೊಡೆ ವಿಪ್ರನವನೆಂದ ೫೨

ಸತ್ಯವೇ ಸ್ವಾಧ್ಯಾಯ ಸತ್ಯವೆ
ನಿತ್ಯಕರ್ಮ ವಿಧಾನವೊಂದೇ
ಸತ್ಯವೇ ಜಪ ಹೋಮ ಯಜ್ಞ ವಿಧಾನ ದಾನ ತಪ
ಸತ್ಯವುಳ್ಳೊಡೆ ಶೂದ್ರನವನಿಂ
ದತ್ಯಧಿಕನಾ ದ್ವಿಜರೊಳಗೆ ವರ
ಸತ್ಯಹೀನನೆ ಹೀನಜಾತಿಗನೆಂದನಾ ಭೂಪ ೫೩

ಧೀರನಾವನು ದಿಟ್ಟನಾರು ವಿ
ಕಾರಿ ಯಾರು ವಿನೀತನಾರಾ
ಚಾರ ಹೀನನದಾರು ಸುವ್ರತಿ ಯಾರು ಶಠನಾರು
ಕ್ರೂರನಾರತಿಕಷ್ಟನಾರು ವಿ
ಚಾರಿ ಯಾರು ವಿಮುಕ್ತನಾರು ವಿ
ದೂರನಾರಿಹಪರಕೆ ಭೂಮಿಪಾಲ ಹೇಳೆಂದ ೫೪

ನಾರಿಯರ ಕಡೆಗಣ್ಣ ಹೊಯ್ಲಿನ
ಧಾರೆಗಳುಕದನಾವನಾತನೆ
ಧೀರನಾತನೆ ದಿಟ್ಟನಬಲೆಯರುಬ್ಬುಗವಳದಲಿ
ಮೇರೆದಪ್ಪುವನೇ ವಿಕಾರಿ ವಿ
ಚಾರಪರನೆ ವಿನೀತನನ್ಯಾ
ಚಾರಯುತನಾಚಾರ ಹೀನನು ಫಣಿಪ ಕೇಳೆಂದ ೫೫

ಕೃತಕವಲ್ಲ ದ್ವಂದ್ವಸಹನೇ
ವೃತಿ ಮುಮುಕ್ಷು ವಿಚಾರಯುಕ್ತನು
ಕೃತಕನೇ ಶಠನಪ್ರಗಲ್ಭ ಕೃತಘ್ನನೇ ಕ್ರೂರ
ಕ್ಷಿತಿಗೆ ಲೋಭಿಯೆ ಕಷ್ಟನಾತ್ಮಾ
ರತನೆ ಮುಕ್ತನು ವೇದ ಮಾರ್ಗ
ಚ್ಯುತನೆ ಲೋಕದ್ವಯಕೆ ದೂರನು ಫಣಿಪ ಕೇಳೆಂದ ೫೬

ಆರು ಭಂಡರು ಸುಜನ ನಿಂದ್ಯರ
ದಾರು ಹಾಲಾಹಲ ಸ್ವರೂಪರ
ದಾರು ಸಾಹಸಿ ಯಾರು ಸಜ್ಜನನಾರು ಶುಚಿ ಯಾರು
ಆರು ಹಗೆ ಸಖನಾರು ಸೇವ್ಯನ
ದಾರು ದುರ್ಲಭನಾರು ದುಸ್ಸಹ
ನಾರು ದುರ್ಮತಿ ಯಾರು ಧರ್ಮಜ ತಿಳಿಯಹೇಳೆಂದ ೫೭

ವ್ಯಸನಿ ನಿಂದ್ಯನು ರಣದೊಳೊಡೆಯನ
ಬಿಸುಟು ಹೋಹನೆ ಭಂಡನತಿ ಸಾ
ಹಸಿಕನೇ ಸೇವಕನು ಮಿತ್ರದ್ರೋಹಿಯೇ ವಿಷವು
ಪಿಸುಣನೇ ಹಗೆ ಪರಸತಿಗೆ ಮನ
ವಿಸುಕದವನೇ ಶುಚಿ ಪರಾರ್ಥ
ವ್ಯಸನಿಯೇ ಸಜ್ಜನನು ಸರ್ಪಾಧೀಶ ಕೇಳೆಂದ ೫೮

ವಿನುತ ಪರತತ್ವಜ್ಞನತಿ ಸೇ
ವ್ಯನು ಸುದುರ್ಲಭನೇ ಜಿತೇಂದ್ರಿಯ
ನನುಗುಣನೆ ಸಖನಾರು ಸೈರಿಸದವನೆ ದುಸ್ಸಹನು
ಮನುಜರಲಿ ದುರ್ಮತಿಯಲಾ ದು
ರ್ಜನರಿಗಾಶ್ರಯವೆಂದು ತೋರಿದು
ದೆನಗೆ ನಿನಗಭಿಮತವೆ ಕೈಕೊಳ್ಳೆಂದನಾ ಭೂಪ ೫೯

ಅಹುದಲೇ ಬಳಿಕೇನು ವಿದ್ಯಾ
ಮಹಿಮೆ ದಾನ ತಪೋಗುಣಕೆ ಸ
ನ್ನಿಹಿತನೇ ಧರ್ಮದಲಿ ಸತ್ಯಾಚಾರ ಶೀಲದಲಿ
ಕುಹಕಿಯಲ್ಲ ವಿರೋಧಿಯಲ್ಲತಿ
ಸಹಸಿಯೈ ಸಾರಜ್ಞನಲ್ಲೆನ
ಬಹುದೆ ನಿನ್ನುಕುತಿಗಳನೆಂದನು ನಹುಷನರಸಂಗೆ ೬೦

ಅರಸ ಕೇಳೈ ಕ್ಷಾತ್ರತೇಜವ
ಹೊರೆವುದೇ ಬ್ರಾಹ್ಮಣ್ಯ ಶಕ್ತಿ
ಸ್ಫುರಣೆ ನೀನೀ ಬ್ರಹ್ಮವರ್ಗದ ಸಾರಸೌಖ್ಯದಲಿ
ಮರೆದೆಲಾ ವಿಪ್ರಾವಮಾನವೆ
ಸಿರಿಗೆ ನಂಜು ಕಣಾ ಮಹೀಸುರ
ವರರುಪಾಸನೆ ನಿನಗೆ ನೀ ಕೃತಕೃತ್ಯನಹೆಯೆಂದ ೬೧

ನೂರು ಯಜ್ಞದ ಹೊಯ್ದುರಿಗೆ ಹರಿ
ದೇರಿದೆನು ಸುರಪತಿಯ ಪೀಠವ
ನೋರುಗುಡಿಸಿತು ಪದವಿಯದು ವಿಪ್ರಾವಮಾನದಲಿ
ಮೂರು ಮಾತೇನೈ ಮಹೀಸುರ
ರೇರಿಸಿದರೇರುವುದು ಮುನಿದರೆ
ಹಾರಿಸುವರೈ ನೂರು ಯಜ್ಞವನೆಂದನಾ ನಹುಷ ೬೨

ಎನ್ನ ವೃತ್ತಾಂತದ ನಿಧಾನವ
ಮುನ್ನವೇ ಬೆಸಗೊಳಲು ಹೇಳಿದೆ
ನಿನ್ನು ನಿನ್ನಭಿಧಾನವನು ನೀನಾವನೆಂಬುದನು
ಇನ್ನು ಕೇಳುವೆನೆನಲು ನಿಮ್ಮಲಿ
ಮುನ್ನಿನವರ ಯಯಾತಿಯಯ್ಯನು
ನನ್ನ ನಾಮವೆ ನಹುಷನೆಂಬುದು ನೃಪತಿ ಕೇಳೆಂದ ೬೩

ಮಾಡಿದೆನು ಮಖಶತವನದು ಹೋ
ಗಾಡಿತಿಂದ್ರನನಲ್ಲಿ ತನಗೆಡೆ
ಮಾಡಿತರಮನೆ ಕಂಡುದಾ ತೆತ್ತೀಸ ಕೋಟಿಗಳು
ನಾಡು ಬಿಡೆನಗಾಯ್ತು ವಶ ಖಯ
ಖೋಡಿಯಿಲ್ಲದೆ ಶಕ್ರಪದದಲಿ
ಜಾಡಿಸುವೆನದನೇನ ಹೇಳುವೆನೆನುತ ಬಿಸುಸುಯ್ದ ೬೪

ಅರಸ ಕೇಳೈ ರಂಭೆಯೂರ್ವಶಿ
ವರ ತಿಲೋತ್ತಮೆ ಗೌರಿ ಮೇನಕಿ
ಸುರಸೆ ಸುವದನೆ ಮಂಜುಘೋಷೆ ಸುಕೇಶಿ ಮೊದಲಾದ
ಸುರಸತಿಯರೆನ್ನರಮನೆಯ ತೊ
ತ್ತಿರುಗಳಾದರು ಮೂರು ಲಕ್ಷದ
ಹೊರಗೆ ಮೂವತ್ತಾರು ಸಾವಿರವೆಂದನಾ ನಹುಷ ೬೫

ಈಸು ನಾರಿಯರಿರಲು ಬಯಲಭಿ
ಲಾಷೆ ದಿವಿಜೇಶ್ವರನ ರಾಣೀ
ವಾಸದಲಿ ಗರಿಗಟ್ಟಿ ತಂದುದು ತನ್ನನೀ ವಿಧಿಗೆ
ಮೀಸಲಿನ ಮಾನಿನಿಯರಲಿ ಮನ
ದಾಸೆ ಮನುಜರ ಮುರಿವುದಕೆ ನಾ
ನೈಸಲೇ ದೃಷ್ಟಾಂತವೆಂದನು ನಹುಷನರಸಂಗೆ ೬೬

ಆಧಿ ಬಿದ್ದುದು ಶಚಿಯ ಮೇಲಣ
ವೇಧೆಯಲಿ ವಿಟಬುದ್ಧಿ ಸಿರಿಗುಪ
ರೋಧವೈ ಸಲೆ ಸತಿಯುಪಾಯವ ಮಾಡಿ ಋಷಿಗಳಿಗೆ
ಬೋಧಿಸಿದಡವರೆನ್ನ ವಾಹನ
ಸಾಧನವೆಯಾದರು ಮುನೀಂದ್ರ ವಿ
ರೋಧವಾಯ್ತೆನಗಲ್ಲಿ ಶಪಿಸಿದನಂದಗಸ್ತ್ಯ ಮುನಿ ೬೭

ಸರ್ಪಗತಿ ಸರ್ಪತ್ವವೆನೆ ಘಟ
ಸರ್ಪ ನೀನಾಗೆಂದರೆನ್ನಯ
ದರ್ಪವನು ಕೆಡೆನೂಕಿ ಬಿದ್ದೆನು ಮುನಿಯ ಚರಣದಲಿ
ಸರ್ಪತನದನುಭವಕೆ ಕಡೆಯೆಂ
ದಪ್ಪುದೆನೆ ಧರ್ಮಜನ ವರ ವಾ
ಗ್ದರ್ಪಣದಲಹುದೆಂದನಿಂದಿದು ಘಟಿಸಿತೆನಗೆಂದ ೬೮

ಎನುತ ದಿವ್ಯಾವಯವ ಕಾಂತಿಯ
ಮಿನುಗು ಮೋಹರದೇಳ್ಗೆ ಮೂಡಿದ
ವನಿಮಿಷಾಂಗದಲುರಗ ಕಾಯದ ಕೋಹಳೆಯನುಗಿದು
ಜನಪ ನಿನ್ನೊಡಹುಟ್ಟಿದನ ಕೊ
ಳ್ಳೆನುತ ಹೇಮ ವಿಮಾನದಲಿ ಸುರ
ವನಿತೆಯರ ವಂಗಡದಲೆಸೆದನು ನಹುಷನಭ್ರದಲೆ ೧೯

ದುಗುಡದಲಿ ಬರೆ ಭೀಮಸೇನನ
ತೆಗೆದು ಬಿಗಿದಪ್ಪಿದನು ಖೇದದ
ಹೊಗರಿದೇಕೆ ವೃಥಾ ಮನೋವ್ಯಥೆಯೇನು ತಾಳದಿರು
ಜಗವರಿಯೆ ನಮ್ಮನ್ವಯದ ಪೂ
ರ್ವಿಗನಲಾ ನಹುಷಂಗೆ ಬಂದು
ಬ್ಬೆಗದ ಹದನಿದು ನಮ್ಮ ಪಾಡೇನೆಂದನಾ ಭೂಪ ೨೦

ನಿನ್ನ ದೆಸೆಯಿಂದಾಯ್ತಲೇ ಪ್ರತಿ
ಪನ್ನ ಶಾಪ ವಿಮೋಕ್ಷವಿದರಲಿ
ನಿನ್ನ ದರ್ಪಕೆ ಹಾನಿಯೇ ಹೇರಾಳ ಸುಕೃತವಿದು
ತನ್ನರಿಷ್ಟವನೀಕ್ಷಿಸದೆ ಪರ
ರುನ್ನತಿಯ ಬಯಸುವರು ಸಜ್ಜನ
ರಿನ್ನು ಸಾಕೆಂದೊರಸಿದನು ಪವನಜನ ಕಂಬನಿಯ ೨೧

ತಿಳುಹಿ ತಂದನು ಸಕಲ ಮುನಿ ಸಂ
ಕುಲ ಸಹಿತ ತನ್ನಾಶ್ರಮಕೆ ಕೋ
ಮಲೆಯ ಕೈಯಿಂದೊರಸಿದನು ಭೀಮನ ಮನೋವ್ಯಥೆಯ
ಹಳಿವು ನಮಗೆಲ್ಲಿಯದಪಾಯದ
ಜಲಧಿಗಳು ಬತ್ತುವುವು ಯದು ಕುಲ
ತಿಲಕ ಗದುಗಿನ ವೀರ ನಾರಾಯಣನ ಕರುಣದಲಿ ೨೨

ಹದಿನಾಲ್ಕನೆಯ ಸಂಧಿ

ಸೂ॰ ಕರುಣಿ ಬಿಜಯಂಗೈದು ಪಾಂಡವ
ಧರಣಿಪನ ಸಂತೈಸಿ ಯಾದವ
ರರಸನಿದ್ದನು ಸಕಲ ಮುನಿಜನ ಸಹಿತ ವನದೊಳಗೆ

ಚಿತ್ತವಿಸು ಜನಮೇಜಯ ಕ್ಷಿತಿ
ಪೋತ್ತಮನೆ ಧರ್ಮಜನ ಮುಖದಲಿ
ಕೆತ್ತ ದುಗುಡವ ಬಿಡಿಸಿ ಭೀಮನ ತಂದನಾಶ್ರಮಕೆ
ಮತ್ತಕಾಶಿನಿ ಧೌಮ್ಯ ನಿಖಿಲ ಮ
ಹೋತ್ತಮರು ಪೀಯೂಷ ಮಧುರ ರ
ಸೋತ್ತರದ ನುಡಿಗಳಲಿ ನಾದಿದರನಿಲಜನ ಮನವ ೧

ಮುಗಿಲು ಬೆಳತುದು ಬರಿಯ ಗಡಬಡೆ
ಗಗನಕುಳಿದುದು ಕೊಂಡ ನೆಲನನು
ತೆಗೆದು ನಿಂದುದು ಮೋಡಿಯಂಕದವೊಲು ನದೀನಿವಹ
ನಗುವ ಕೊಳನಭ್ಯಾಗತೆಯ ಹಂ
ಸೆಗಳು ಮೆರೆದವು ಮೊರೆವ ತುಂಬಿಯ
ಸುಗುಡತನ ತಾವರೆಯೊಳೆಸೆದುದು ಶರದ ಸಮಯದಲಿ ೨

ಸವೆದುದೀ ವನವಿಲ್ಲಿ ಫಲ ಮೃಗ
ನಿವಹ ಬೀತುದು ನಮ್ಮ ಕಾಲಾ
ಟವನು ಸೈರಿಸಿ ನಿಲುವ ವನವನು ಕಾಣೆ ನಾನೆನುತ
ನಮಗೆ ಮಗುಳಾ ಕಾಮ್ಯಕದ ವನ
ಭವನವೈಸಲೆಯೆಂದು ಮುನಿಜನ
ನಿವಹ ಸಹಿತವನೀಶ ಕಾಮ್ಯಕ ವನಕೆ ನಡೆತಂದ ೩

ಆ ಶರತ್ಕಾಲವನು ತದ್ವನ
ವಾಸದಲಿ ನೂಕಿದನು ಘನ ಪರಿ
ತೋಷ ಸೂಚಕ ಶಕುನವಂಗಸ್ಫುರಣೆ ಮೊದಲಾದ
ಮೀಸಲಳಿಯದ ಹರುಷ ರಸದಾ
ವೇಶದಲಿ ಮನವುಕ್ಕಿ ಹಿಗ್ಗಿದ
ನೀ ಶಕುನ ಸುಮ್ಮಾನವಿದಕೇನಹುದು ಫಲವೆಂದ ೪

ಇದಕೆ ಕೃಷ್ಣಾಗಮನವೇ ಫಲ
ದುದಯವೈಸಲೆಯೆನುತಲಿರೆ ಬಂ
ದಿದಿರೆ ನಿಂದನು ದೂತನಮಲ ದ್ವಾರಕಾಪುರದ
ಇದೆ ಕೃಪಾನಿಧಿ ಬಂದನಸುರಾ
ಭ್ಯುದಯ ಘಾತಕ ಬಂದ ರಿಪು ಬಲ
ಮದನ ಮದಹರ ಬಂದನಿದೆಯೆಂದನು ಮಹೀಪತಿಗೆ ೫

ಸೂಚಿಸಿದವೇ ಶಕುನ ಪುನರಪಿ
ಗೋಚರಿಸಿತೇ ಗರುವನಿಧಿ ನಾ
ವಾಚರಿಸಿತೇನೋ ಶಿವಾ ಭವ ಭವ ಸಹಸ್ರದಲಿ
ನಾಚಿದವು ನಿಗಮಂಗಳಾವನ
ಸೂಚಿಸುವುವೆಮ್ಮೊಳಗೆ ಕೃಪೆಯಲ
ರೋಚಕವನಾ ದೈವ ಮಾಡದೆನುತ್ತ ಹೊರವಂಟ ೬

ಹಳುವವನು ಹೊರವಂಟು ಗರುಡನ
ಹಳವಿಗೆಯ ದೂರದಲಿ ಕಂಡನು
ತುಳುಕಿದವು ಸಂತೋಷಜಲ ನಿಟ್ಟೆಸಳುಗಂಗಳಲಿ
ತಳಿತ ರೋಮಾಂಚದಲಿ ಸಮ್ಮೊದ
ಪುಳಕದಲಿ ಪೂರಾಯದುಬ್ಬಿನ
ಲಿಳೆಯೊಡೆಯ ಮೈಯಿಕ್ಕುತೈದಿದನಖಿಳ ಜನಸಹಿತ ೭

ಇಳಿದು ದಂಡಿಗೆಯಿಂದ ಕರುಣಾ
ಜಲಧಿ ಬಂದನು ಕಾಲು ನಡೆಯಲಿ
ಸೆಳೆದು ಬಿಗಿಯಪ್ಪಿದನಿದೇನಾಸುರವಿದೇನೆನುತ
ಬಳಿಕ ಭೀಮಾರ್ಜುನರ ಯಮಳರ
ನೊಲಿದು ಮನ್ನಿಸಿ ಸತಿಯ ಲೋಚನ
ಜಲವ ಸೆರಗಿನೊಳೊರಸಿ ಸಂತೈಸಿದನು ಬಾಲಕಿಯ ೮

ಕುಶಲವೇ ಕುರು ರಾಯನೂಳಿಗ
ವೆಸಗದಲೆ ನಿಮ್ಮತ್ತಲವಧಿಯ
ದೆಸೆ ಸಮೀಪವೆ ತೊಳಲಿದಿರೆಲಾ ವನವನಾಂತದಲಿ
ಪಶುಪತಿಯು ಹಿಡಿವಂಬು ಕೈವ
ಶಿಸಿತು ಗಡ ಪಾರ್ಥಂಗೆ ನಮಗಿಂ
ದೊಸಗೆಯಾಯಿತು ಪುಣ್ಯವೆಂದನು ಹರಿ ಯುಧಿಷ್ಠಿರಗೆ ೯

ಆಗಲೀ ವೈಷ್ಣವಕೆ ನಮ್ಮಯ
ತಾಗು ಘಟ್ಟಿನ ರಕ್ಷೆ ತೊಡಚಿದು
ದಾಗಳಿದ್ದುದು ಪಾಶುಪತ ಶರವದರ ಬಳಿವಿಡಿದು
ಈಗಳೊಸಗೆಯೆ ಯೆಮ್ಮ ಪಂಚಕ
ದಾಗು ಹೋಗನು ಹೊತ್ತು ನಡೆಸಿದ
ಡಾಗಳಾಯ್ತೆಮಗೊಸಗೆಯೆಂದನು ನೃಪತಿ ವಿನಯದಲಿ ೧೦

ತೊಳಲಿದೆವಲಾ ಕೃಷ್ಣ ತಪ್ಪದೆ
ಹಳುವ ಹಳುವವನಮರ ಪುರದಲಿ
ಕೆಲವು ದಿನವಿರಲರ್ಜುನಂಗಾಯ್ತೂರ್ವಶಿಯ ಶಾಪ
ಖಳರನಲ್ಲಿ ನಿವಾತಕವಚರ
ಗೆಲಿದು ಬಂದನು ಪಾರ್ಥನದರೊಳು
ಕೆಲಬರಸುರರ ಕಾದಿ ಕೊಂದನು ಭೀಮನಡವಿಯಲಿ ೧೧

ಇಂತು ತಲೆಯೊತ್ತುತ ಮಹಾ ವಿಪಿ
ನಾಂತರವ ತೊಳಲಿದೆವು ಬಳಿಕ ವ
ನಾಂತರದೊಳಗಿಂದಾದುದೂಳಿಗ ನಹುಷ ನೃಪತಿಯಲಿ
ಭ್ರಾಂತಿಯ್ಮೆ ಸಲೆ ಭೀಮನುರಗಾ
ಕ್ರಾಂತನಾದನು ಧರ್ಮಕಥೆಯಲಿ
ಸಂತವಾಯ್ತು ವಿಶಾಪವಾದನು ನಹುಷನಾ ಕ್ಷಣಕೆ ೧೨

ಮರಳಿ ಕಾಮ್ಯಕ ವನದ ದಳ ಮಂ
ದಿರವನೇ ನೆಲೆ ಮಾಡಿದೆವು ವಿ
ಸ್ತರಣವಿದು ಹಿಂದಾದ ವಿಪಿನಾಂತರ ಪರಿಭ್ರಮದ
ಕರುಣಿ ನಿಮ್ಮಡಿದಾವರೆಯ
ದರುಶನದಿನಾಯಾಸ ಪಾರಂ
ಪರೆಗೆ ಬಿಡುಗಡೆಯೆನುತ ವೈಯಿಕ್ಕಿದನು ಯಮಸೂನು ೧೩

ರಾಯ ಕೇಳಾಕ್ಷಣಕೆ ಮಾರ್ಕಂ
ಡೇಯ ನಾರದರಿಳಿದರಬುಜ ದ
ಳಾಯತಾಕ್ಷಂಗೆರಗಿದರು ಭಯಭರಿತ ಭಕ್ತಿಯಲಿ
ತಾಯಿ ಕರುಗಳ ಬಿಡದವೊಲು ನಿ
ರ್ದಾಯದಲಿ ನಿಜಭಕ್ತಸಂಗದ
ಮಾಯೆ ಬಿಡದೈ ನಿನ್ನನೆಂದರು ಹೊರಳಿ ಚರಣದಲಿ ೧೪

ತಪದಲುರಿದು ಸಮಾಧಿ ಯೋಗದ
ಲುಪಶಮದಲುಬ್ಬೆದ್ದು ಹೋಮದ
ಜಪದ ಜಂಜಡದೊಳಗೆ ಸಿಲುಕಿ ಜನಾರ್ದನನ ಮರೆವ
ಅಪಸದರು ನಾವ್ ಕರ್ಮ ನಿಷ್ಠೆಯ
ಕೃಪಣರೆವಗೆಯು ತನ್ನ ತೋರುವ
ಕೃಪೆಯ ನೋಡೈ ಭೂಪನೆನುತೀಕ್ಷಿಸಿದರಚ್ಯುತನ ೧೫

ಈಯಘಾಟದ ದೈವವಿದು ನಿ
ರ್ದಾಯದಲಿ ನಿಮ್ಮೊಳಗೆ ಸೇರಿತು
ರಾಯರಿದ್ದರು ಹಿಂದೆ ಭರತ ಭಗೀರಥಾದಿಗಳು
ಆಯಿತೇನವರಿಗೆ ಸರೋಜದ
ಳಾಯತಾಕ್ಷನ ಚರಣ ಸೇವೆ ನಿ
ರಾಯಸದ ಸಹವಾಸ ಭೋಜನವೆಂದನಾ ನೃಪನ ೧೬

ವರುಷ ಹದಿನಾರರಲಿ ಮೃತ್ಯುವ
ಪರುಟವಿಸಿದುದು ಕರ್ಮಗತಿ ಮುರ
ಹರನ ಸೇವೆಯ ಮಾಡಿ ಸವೆದೆನು ಸರ್ವಭಾವದಲಿ
ಕರುಣಿ ಬಿಜಯಂಗೈದು ಮೃತ್ಯುವಿ
ನುರಿವ ಗಂಟಲೊಳಿಳಿವ ತನ್ನನು
ಬರಸೆಳೆದನೆಂದಮಳ ಮಾರ್ಕಂಡೇಯ ಮುನಿ ನುಡಿದ ೧೭

ಓಕರಿಸಿದಳು ಮೃತ್ಯುವೆನ್ನನು
ಲೋಕದಲಿ ಹೊರಗೆಂದು ಯಮನ ನಿ
ರಾಕರಣೆಗಳ ಜೀವ ಜಾತಿಯೊಳಲ್ಲವಿವನೆಂದು
ಲೋಕದಲಿ ಡಂಗುರವ ಹೊಯ್ಸಿದ
ನೀ ಕಮಲನಾಭನೆ ಕಣಾ ಕರು
ಣೈಕನಿಧಿ ನಿಮಗೊಲಿದನೆಂದನು ಮುನಿ ಯುಧಿಷ್ಠಿರಗೆ ೧೮

ಧರಣಿಪತಿ ಕೇಳ್ ಪ್ರಳಯದಲಿ ಸಾ
ಗರದ ತೆರೆ ಮುಂಡಾಡಿದವು ಸಾ
ಗರದ ತೆರೆಯಲಿ ಸಕಲ ಜಲಧಿಗಳೇಕ ರೂಪದಲಿ
ಧರೆಯ ಮುಳುಗಿಸಿ ಮೇಲೆ ಮೇಲು
ಬ್ಬರಿಸಿ ಜಗದಡಿಕಿಲಿನ ಜೋಡಿಯ
ಜರುಹಿದವು ನೀರೇರಿತಗ್ಗದ ಸತ್ಯಲೋಕದಲಿ ೧೯

ಜಗದ ಜೀವರ ಕರ್ಮ ಬೀಜಾ
ಳಿಗಳ ಭೈತ್ರವ ತನ್ನ ಬಾಲಕೆ
ಬಿಗಿದು ನೀರಲಿ ನುಸುಳಿದನು ಮತ್ಸ್ಯಾವತಾರದಲಿ
ಬಗೆಯಲಾ ಹರಿಯಿಾತನೇ ದೃ
ಗ್ಯುಗಕೆ ಗೋಚರನಾದನರಸುವ
ನಿಗಮವೀತನ ಹೆಜ್ಜೆಗಾಣವು ರಾಯ ಕೇಳೆಂದ ೨೦

ಮರಳಿ ಹೂಡಿದನಿವನು ಜಗದ್ವಿ
ಸ್ತರಣವನು ಮಾಯಾ ಮಹೋದಧಿ
ಹೊರೆದನುನ್ನತ ಸತ್ವನಲಿ ಮೇಲಾದ ಲೋಚನದ
ಉರಿಯಲದ್ದುವನಿದನು ಲೀಲಾ
ಚರಿತವಿದು ಕೃಷ್ಣಂಗೆ ನಿನ್ನಯ
ಸಿರಿಯೆ ಸಿರಿ ಬಡತನವೆ ಬಡತನವೆಂದನಾ ಮುನಿಪ ೨೧

ಅರಸ ಕೇಳ್ ಕಲ್ಪಾಂತದಲಿ ಬಿಡೆ
ಬಿರಿದುದೀ ಬ್ರಹ್ಮಾಂಡ ಬಹಿರಾ
ವರಣ ಜಲನಿಧಿ ಜಲದೊಳೊಂದಾಯ್ತೇನನುಸುರುವೆನು
ಹರಿ ವಿನೋದದೊಳಾಲದೆಲೆಯಲಿ
ಸಿರಿ ಸಹಿತ ಪವಡಿಸಿದನಿನ ಶಶಿ
ಕಿರಣವಿಲ್ಲ ಮಹಾಂಧಕಾರ ಸಭಾರವಾಯ್ತೆಂದ ೨೨

ಈ ನೆಲನನೀ ಚಂದ್ರ ಸೂರ್ಯ್ಯರ್ಕ್ಕ
ಶಾನು ತೇಜವನೀ ಸಮೀರಣ
ನೂನ ಭುವನವ ಕಾಣೆನೊಂದೇ ಸಲಿಲ ಸೃಷ್ಟಿಯಲಿ
ಏನ ಹೇಳುವೆನೆನ್ನ ಚಿತ್ತ
ಗ್ಲಾನಿಯುನು ಬಲುತೆರೆಯ ಹೊಯ್ಲಿನೊ
ಳಾನು ಮುಂಗುತ್ತೇಳುತಿದ್ದೆನು ರಾಯ ಕೇಳೆಂದ ೨೩

ಹೇಳಲೇನದ ಮೃತ್ಯುವಿನ ಗೋ
ನಾಳಿಯೊಳಗಂದಿಳಿಯಲೊಲ್ಲದೆ
ಕಾಳು ಮಾಡಿದೆನೇ ಮುರಾರಿಯ ಭಜಿಸಿ ಭಕ್ತಿಯಲಿ
ಬಾಲಕನೊಳವಗುಣವನಕಟಾ
ತಾಳಬಹುದೇ ತಾಯೆ ಮೃತ್ಯುವ
ತಾಳಿಗೆಯ ತೆಗೆದೆನ್ನನೊಳಕೊಳ್ಳೆಂದು ಹಲುಬಿದೆನು ೨೪

ನೀರು ಹೊಕ್ಕುದು ನೂಕಿ ವಿವಿಧ
ದ್ವಾರದಲಿ ಬೆಂಡೇಳ್ವೆನೊಮ್ಮೆ ಮ್ಮತಿ
ದೂರ ಮುಳುಗುವೆನಡ್ಡ ಬೀಳ್ವೆನು ತೆರೆಯ ಹೊಯ್ಲಿನಲಿ
ಮಾರಿಗುಬ್ಬಸವೆನ್ನ ಮರಣವ
ನಾರು ಕಂಡರು ಹೇಸಿ ನನ್ನನು
ದೂರ ಬಿಸುಟಳು ಮೃತ್ಯು ಬಳಲಿದೆ ನಿಂತು ಹಲ ಕಾಲ ೨೫

ಮುಳುಗುತೇಳುತ ಬರುತ ವಟ ಕಂಜ
ದೆಲೆಯಲೀತನ ಕಂಡೆನೈ ನಾ
ನೆಳತಟಕೆ ಬಿದ್ದಂತೆ ತೆರೆಯೆಡತರಕೆ ತನಿಗೆಡೆದು
ಜಲಜಸಂಭವನಾ ಜಲವ ಮು
ಕ್ಕುಳಿಸುತುಗುಳುತ ನಾಲ್ಕು ಮುಖದಲಿ
ನಿಲುಕಿ ನಿಗುರುತ ನಿಲುತ ಬಂದನು ಕಂಡನೀ ಹರಿಯ ೨೬

ಆರು ನೀನೆನುತಾತನೀತನ
ಸಾರಿದನು ಬೆಸಗೊಳಲು ಜಗದಾ
ಧಾರಕನು ಜಗದುದರ ಹರಿ ತಾನೆಂದೊಡಜ ನಗುತ
ಭೂರಿ ಜಗವೆನ್ನುದರದಲಿ ನೀ
ನಾರು ಜಗಕೆಂದೆನುತ ಗರುವ ವಿ
ಕಾರದಲಿ ಪರಮೇಷ್ಠಿ ನಿಜತೇಜನಚಾರಿಸಿದ ೨೭

ಆದುವೇ ನಿನ್ನುದರದಲಿ ಜಗ
ವಾದೊಡೀಕ್ಷಿನೆಪೆನುತಲೀ ಕಮ
ಲೋದರನು ಕಮಲಜನ ಜಠರವ ಹೊಕ್ಕು ಹೊರವಂಟು
ಭೇದಿಸಿದೆ ನಾನೆನ್ನ ಜಠರದೊ
ಳಾದ ಲೋಕವನೆಣಿಸಿ ಬಾಯೆನ
ಲಾ ದುರಾಗ್ರಹಿಯಿಳಿದನಸುರಾಂತಕನ ಜಠರದಲಿ ೨೮

ಹೊಲಬುದಪ್ಪಿದನಲ್ಲಿ ಭುವನಾ
ವಳಿಗಳಿದ್ದವು ಕೋಟಿ ರುದ್ರಾ
ವಳಿಗಳಿದ್ದರು ಕೋಟಿ ಪರಮೇಷ್ಠಿಗಳು ಶತಕೋಟಿ
ಹುಲು ನೊರಜು ಸಾಗರದ ಸಲಿಲವ
ನಳೆವವೊಲು ನೊಣ ಹಾರಿ ಗಗನದ
ತಲೆಗಡೆಯ ಕಾಣಿಸುವದೆಂಬವೊಲಾಯ್ತು ಕೇಳೆಂದ ೨೯

ಹಲವು ಯುಗ ಪರಿಯಂತರಲ್ಲಿಯೆ
ತೊಳಲಿ ಕಡೆಗಾಣದೆ ಕೃಪಾಳುವ
ನೊಲಿದು ಹೊಗಳಿದನಜನು ವೇದ ಸಹಸ್ರ ಸೂಕ್ತದಲಿ
ಬಳಿಕ ಕಾರುಣ್ಯದಲಿ ನಾಭೀ
ನಳಿನದಲಿ ತೆಗೆದನು ವಿರಿಂಚಿಗೆ
ನಳಿನಸಂಭವನೆಂಬ ಹೆಸರಾಯ್ತೆಂದು ಮೊದಲಾಗಿ ೩೦

ಆ ಮಹಾ ಜಮದಗ್ನಿ ಮುಖದಲಿ
ಹೋಮವಾಯ್ತು ತದಗ್ನಿಯಡಗಿದು
ದಾ ಮರುತ್ತಿನಲಾ ಬಹಳ ಬಹಿರಾವರಣ ಪವನ
ವ್ಯೋಮದಲಿ ತದಹಮ್ಮಹತ್ತು ವಿ
ರಾಮವಾ ಪ್ರಕೃತಿಯಲಿ ಮಾಯಾ
ಕಾಮಿನಿಗೆ ಪರಮಾತ್ಮನಲಿ ಲಯವೆಂದನಾ ಮುನಿಪ ೩೧

ಏಸು ದಿನವೀ ಜಗದ ಬಾಳುವೆ
ಯೇಸು ದಿನವೀ ಪ್ರಳಯಮಯ ಪರಿ
ಭಾಸಮಾನ ಬ್ರಹ್ಮತೇಜೋ ರೂಪವೇಸು ದಿನ
ಆ ಸದಾನಂದೈಕ ರಸಕೆ ಪ
ರಾಸಿತಾವಿದ್ಯಾಪ್ರಪಂಚ ವಿ
ಳಾಸವಾಯ್ತು ವಿಭಾಗ ಸೃಷ್ಟಿ ವಿಧಾನ ಚಿಂತೆಯಲಿ ೩೨

ಏಕಮೇವಾದ್ವಿತಿಯವೆಂಬ ನಿ
ರಾಕುಳಿತ ತೇಜೋನಿಧಿಗೆ ಮಾ
ಯಾ ಕಳತ್ರದೊಳಾಯ್ತು ನಿಜಗುಣ ಭೇದವವರಿಂದ
ಆ ಕಮಲಭವನೀ ಮುಕುಂದ ಪಿ
ನಾಕಿಯೆಂಬಭಿಧಾನದೊಳ್ ತ್ರಿಗು
ಣಾಕೃತಿಯ ಕೈಕೊಂಡನುರು ಲೀಲಾ ವಿನೋದದಲಿ ೩೩

ಆ ರಜೋಗುಣಕಬುಜಭವನಧಿ
ಕಾರಿ ತನ್ನ ಶರೀರದರ್ಧವ
ನಾರಿಯನು ಮಾಡಿದನು ಶತರೂಪಾಭಿಧಾನದಲಿ
ಸೇರಿಸಿದನರ್ಧದಲಿ ಮನುವನು
ದಾರ ಚರಿತನು ಸಕಲ ಧರ್ಮದ
ಸಾರವನು ವಿಸ್ತರಿಸಿದನು ಮನು ಭುವನ ವಿಭುವಾಗಿ ೩೪

ಭೃಗು ಪುಲಸ್ತ್ಯ ವಸಿಷ್ಠ ದಕ್ಷಾ
ದಿಗಳೆನಿಪ್ಪ ನವಪ್ರಜೇಶ್ವರ
ರೊಗುಮಿಗೆಯ ಮಾಡಿದನು ಸೃಷ್ಟಿಗೆ ಬೇರೆ ಬೇರವರ
ಜಗದ ಜೋಡಣೆಯಾಯ್ತು ಭೂತಾ
ಳಿಗೆ ಚತುರ್ವಿಧ ಸೃಷ್ಟಿಯೊಡ್ಡಣೆ
ನಿಗಮ ಮತದಲಿ ಹೂಡಿತವನೀಪಾಲ ಕೇಳೆಂದ ೩೫

ಆದಿಯಲಿ ಕೃತಯುಗ ಹರಿಶ್ಚಂ
ದ್ರಾದಿಗಳು ಸೂರ್ಯಾನ್ವಯಕೆ ಬುಧ
ನಾದಿ ನಿಮ್ಮನ್ವಯಕೆ ಬಳಿಕ ಪುರೂರವ ಕ್ಷಿತಿಪ
ಮೇದಿನಿಯನಾ ಯುಗದಲವಗೋ
ಪಾದಿ ಸಲಹಿದರಿಲ್ಲ ಬೆಳಗಿತು
ವೇದ ಬೋಧಿತ ಧರ್ಮ ಸೂರ್ಯಪ್ರಭೆಗೆ ಮಿಗಿಲಾಗಿ ೩೬

ಆ ಯುಗದ ತರುವಾಯಲಾ ತ್ರೇ
ತಾಯುಗವಲೇ ಬಳಿಕ ಧರ್ಮದ ಲಾ
ಯದಲಿ ಕಟ್ಟಿದರಧರ್ಮವನೊಂದು ಪಾದದಲಿ
ರಾಯ ಕೇಳ್ದ್ವಾಪರದಲಿ ದ್ವ
ಘಾಯದಲಿ ತಾ ಧರ್ಮವೆರಡಡಿ
ಬೀಯವಾದುದು ನಿಂದುದೆನಿಸಿತು ನಿನ್ನ ದೆಸೆಯಿಂದ ೩೭

ಕಲಿಯ ರಾಜ್ಯದಲೊಂದು ಪಾದದ
ಸಲುಗೆ ಧರ್ಮಕ್ಕಹುದು ಗಡ ವೆ
ಗ್ಗಳಿಯುವವರೊಳಸತ್ಯ ಧರ್ಮ ದ್ರೋಹ ಮಾತ್ಸರ್ಯ
ಕಳವು ಹಿಂಸೆಯನೀತಿ ಲೋಭ
ಸ್ಖಲಿತವಾರಡಿ ಠಕ್ಕು ವಂಚನೆ
ಹಳಿವು ಹಾದರಗವತೆಯೆಂಬಿವರುಬ್ಬು ಹಿರಿದೆಂದ ೩೮

ಈಯಧರ್ಮವ ಪತಿಕರಿಸಿ ತ
ನ್ನಾಯತಕೆ ಭೂತಳವ ತಂದು ನಿ
ರಾಯಸದಲೇ ಬಳಸುತಿರ್ದನು ದುಂದುಪೆಂಬಸುರ
ರಾಯ ಕೇಳಾ ದೈತ್ಯನನು ತ
ನ್ನಾಯುಧಕೆ ಬಲಿಗೊಟ್ಟು ಬಳಿಕ
ಸ್ಥಾಯಿ ಧರ್ಮವ ಬಲಿದು ಕೊಟ್ಟನು ದುಂದುಮಾರನೃಪ ೩೯

ಆ ನೃಪನ ರಾಜ್ಯದಲಿ ಯಜ್ಞ ವಿ
ಧಾನ ವೈದಿಕವಿಧಿ ಕೃತಾನು
ಷ್ಠಾನ ಯಮ ನಿಯಮಾದಿ ಯೋಗವಿಶಿಷ್ಟ ನೀತಿಯಲಿ
ದೀನ ಭಾವವನಳಿದು ಯಾಚ್ಞಾ
ಹೀನ ವೃತ್ತಿಯ ಬಿಸುಟು ಲೋಕದ
ಭಾನು ತೇಜದಲೆಸೆದುದಂದು ಮಹೀಸುರವ್ರಾತ ೪೦

ರಣದೊಳಹಿತರ ಶಿರದ ಮಿಂದುಳಾ
ತಣವು ಶಸ್ತ್ರಕೆ ವಿತ್ತ ಭೂಸುರ
ಗಣಕೆ ವರಯುವ್ವನದ ವಿಭ್ರಮ ನಿಜಸತೀಜನಕೆ
ಗುಣ ಮನುಷ್ಯವ್ರಜಕೆ ಪರಿ ರ
ಕ್ಷಣವಶೇಷ ವ್ರಜಕೆನಲು ಧಾ
ರುಣಿಪತಿಗಳೊಪ್ಪಿದರು ಕೃತ ಯುಗದಾದಿ ಕಾಲದಲಿ ೪೧

ಪ್ರೌಢನೇ ವ್ಯವಹರಿಸಲಗ್ಗದ
ಮೂಢನೇ ಬರಲೊಂದೆ ಸತ್ಯ ನಿ
ರೂಢಿಯಲಿ ವಾಣಿಜ್ಯ ಸುವ್ಯವಹಾರ ಮಾರ್ಗದಲಿ
ಗಾಢ ವಿಕ್ರಯ ಸಕ್ರಯದೊಳೇ
ಗೂಢಕರು ಮೂಲ್ಯೈಕ ಲಾಭ ನಿ
ರೂಢ ಪರರೊಪ್ಪಿದರು ವೈಶ್ಯರು ಧರ್ಮಕಾಲದಲಿ ೪೨

ನಿಜಕೃಷಿ ವ್ಯವಸಾಯದಲಿ ತ
ದ್ದ್ವಿಜ ಕುಲದ ಶಿಶ್ರೂಷೆಯಲಿ ಪಾ
ದಜರು ಕೃತ್ಯರು ಚತುರ್ವರ್ಣದಲಿ ಮಾರ್ಗವಿದು
ನಿಜ ನಿಜಾಂಗದ ಧರ್ಮಗತಿಯಲಿ
ಮಜಡರಾದರೆ ಮನುಜರಾದವ
ರಜನ ಪರಮಾಯುಷ್ಯ ಪರಿಯಂತಿಹರು ನರಕದಲಿ ೪೩

ನಯವಿದನೆ ಕೇಳ್ ವೇದ ಶಾಸ್ತ್ರಾ
ಧ್ಯಯನದಲಿ ಪಿತೃಮಾತೃ ಶಿಶ್ರೂ
ಷೆಯಲಿ ಗುರು ಪರಿಚರ್ಯದಲಿ ವಿಮಲಾಗ್ನಿ ಕಾರ್ಯದಲಿ
ನಿಯತ ಮೌನವ್ರತದ ಸಂಗ
ಪ್ರಿಯದ ಶೌಚಾಸ್ತೇಯದಿಂದ್ರಿಯ
ಜಯದ ವಿಮಲ ಬ್ರಹ್ಮಚರ್ಯಾಶ್ರಮದ ಗತಿಯೆಂದ ೪೪

ದೇವ ಗುರು ಪಿತೃ ವಹ್ನಿ ಶಿಶ್ರೂ
ಷಾವಧಾನ ನಿರಂತ ಷಟ್ಕ
ರ್ಮಾವಲಂಬ ನಿಜೋನ್ನತಾಲಾಭೈಕ ಸಂತೋಷ
ಪಾವನವ್ರತ ನಿಜ ಪುರಂಧ್ರೀ
ಸೇವೆ ಸತ್ಯಾಸ್ತೇಯ ಶೌಚ ಗು
ಣಾವಳಿಗಳುಳ್ಳಾತ ಗೃಹಪತಿಯೆಂದನಾ ಮುನಿಪ ೪೫

ವನ ವನದೊಳಾಶ್ರಮದೊಳಗೆ ಕುಲ
ವನಿತೆ ಸಹಿತಮಲಾಗ್ನಿ ಹೋತ್ರದ
ನೆನಹು ತಪ್ಪದೆ ಕಂದಮೂಲ ಫಲಾಶನಂಗಳಲಿ
ವಿನಯ ಯಜ್ಞ ತಪೋವ್ರತಾದಿಗ
ಳನಿತರಲಿ ನಿಷ್ಠಾತ್ಮನಾದೊಡೆ
ವಿನುತ ವಾನಪ್ರಸ್ಥನೆಂಬರು ರಾಯ ಕೇಳೆಂದ ೪೬

ಮದನನಂಬನು ಮುರಿದು ರೋಷವ
ಕದನದಲಿ ಸೋಲಿಸಿದು ಲೋಭವ
ನೊದೆದು ಮೋಹವ ನೂಕಿಯಳಿದಾ ಮದವ ಮತ್ಸರದ
ಎದೆಯಲಂಕವ ಬರೆದು ವೈರಾ
ಗ್ಯದ ಸುಸಮ್ಯಗ್ಜ್ಞಾನ ಯೋಗದ
ಪದದ ಬೆಳೆ ಸಿರಿವಂತನೇ ಯತಿಯೆಂದನಾ ಮುನಿಪ ೪೭

ಧರಣಿಪತಿ ಕೇಳ್ ಜಾತಿ ವರ್ಗ
ಪರಮ ಧರ್ಮದ ಸಾರವಿದನಾ
ಚರಿಸಿ ಸಿದ್ಧಿಯನೈದಿದನ ಪಿತೃಮಾತೃ ಭಕ್ತಿಯಲಿ
ಒರೆಗೆ ಬಣ್ಣಕೆ ಬೆರಸಿ ವೇದೋ
ಚ್ಚರಿತ ಧರ್ಮವನರುಹಿದನು ಭೂ
ಸುರಗೆ ಧರ್ಮವ್ಯಾಧನೆಂಬನ ಕಥೆಯ ಕೇಳೆಂದ ೪೮

ಹದಿನೈದನೆಯ ಸಂಧಿ

ಸೂ. ಮುನಿಗಳುಪ ಕಥೆಯಲಿ ಯುಧಿಷ್ಠಿರ
ಜನಪತಿಯ ಸಂತೈಸಿ ಕಾಮ್ಯಕ
ವನದಿನಸುರಾರಿ ಬಂದನು ದ್ವಾರಕಾಪುರಿಗೆ

ಕೇಳು ಜನಮೇಜಯ ಧರಿತ್ರೀ
ಪಾಲ ಮಾರ್ಕಂಡೇಯ ಮುನಿಪತಿ
ಹೇಳಿದನು ವೇದೋಕ್ತ ಧರ್ಮದ ಸಾರ ಸಂಗತಿಯ
ಶೀಲಗುಣ ಸಚ್ಚರಿತನಲಿ ಸಂ
ಮೇಳವಿಸಿ ಮುದ್ಗಲ್ಯವಂಶ ವಿ
ಶಾಲನೊಬ್ಬನು ವಿಪ್ರನಿರ್ದನು ಬ್ರಹ್ಮಚರಿಯದಲಿ ೧

ಧರಣಿಪತಿ ಕೇಳಾ ಮಹೀಸುರ
ವರನು ವೇದಾಧ್ಯಯನ ಪರನನ
ವರತ ವಿದ್ಯಾಭ್ಯಾಸಶೀಲನು ವನದಲೊಂದು ದಿನ
ಮರದ ಮೊದಲಲಿ ವೇದ ಪಾಠದ
ಲಿರೆ ಮಹೀರುಹದಗ್ರದಲಿ ಸಂ
ಚರಿಸುತಿಹ ಖಗವಿಷ್ಠೆ ಬಿದ್ದುದು ಮೇಲೆ ಭೂಸುರನ ೨

ಮೇಲೆ ನೋಡಿದಡಧಿಕ ರೋಷ
ಜ್ವಾಲೆಯಲಿ ಗರಿ ಸೀದು ಧರಣಿಯ
ಮೇಲೆ ಬಿದ್ದುದು ವಿಹಗವೀತನ ಮುಂದೆ ತನು ಬೆಂದು
ಲೀಲೆಯಲಿ ಭೂದೇವನಲ್ಲಿಂ
ಮೇಲೆ ಭಿಕ್ಷಾಟನಕೆ ಭೂಸುರ
ರಾಲಯದ ಹಂತಿಯಲಿ ಹೊಕ್ಕನು ರಾಯ ಕೇಳೆಂದ ೩

ಒಂದು ಮನೆಯಲಿ ಭಿಕ್ಷಕೋಸುಗ
ನಿಂದನಾ ಮನೆಯಾಕೆ ಭಿಕ್ಷವ
ತಂದಪೆನು ನಿಲ್ಲೆನುತ ಪತಿ ಪರಿಚರ್ಯೆಯನು ಮಾಡಿ
ತಂದು ಭಿಕ್ಷವ ಹಿಡಿಯೆನಲ್ ದ್ವಿಜ
ನಂದು ಮುನಿದೀಕ್ಷಿಸಿದೊಡಾ ಸತಿ
ಯೆಂದಳೆಲೆ ಮರುಳೆ ಕುಜಾಗ್ರದ ವಿಹಗನಲ್ಲೆಂದು ೪

ಬೆರಗಿನೊಳು ದ್ವಿಜನಿರ್ದನಿದನೆಂ
ತರಿತಳೆನುತೆಲೆ ವಿಪ್ರ ನಿಗಮದ
ನರಿಯೆ ಧರ್ಮರಹಸ್ಯ ತತ್ವದ ಸಾರಸಂಗತಿಯ
ಅರಿದು ಪತಿಪರಿಚರ್ಯದಲಿ ಕೈ
ಮೆರೆಯದಾರಾಗದಲಿ ಸುಧರ್ಮದೊ
ಳಿರಕವುಳ್ಳೊಡೆ ಧನ್ಯರೆಂದಳು ಕಾಂತೆ ಭೂಸುರಗೆ ೫

ಇಲ್ಲಿಗಿದೆ ನಾಲ್ಕೈದು ಯೋಜನ
ದಲ್ಲಿ ಪಟ್ಟಣವದರೊಳೊಬ್ಬನು
ಬಲ್ಲನಗ್ಗದ ಧರ್ಮ ಮುದ್ರಾಘಟನ ವಿಘಟನವ
ಅಲ್ಲಿಗೈದುವುದಾತನಲಿ ನೀ
ನೆಲ್ಲವನು ತಿಳಿ ನಿನ್ನ ಚಿತ್ತದೊ
ಳಿಲ್ಲಲೇ ಪರಿಪಾಕವೆಂದುಪದೇಶಿಸಿದಳಬಲೆ ೬

ಹೆಸರು ಧರ್ಮವ್ಯಾಧನಾತನ
ದೆಸೆಯೊಳರಿ ಹೋಗೆನಲು ಬಂದನು
ವಸುಧೆಯಮರನು ನಗರಿಗಾ ಸತಿ ಕೊಟ್ಟ ಕುರುಹಿನಲಿ
ಹಸಿದು ಬೀದಿಗಳೊಳಗೆ ತೊಳಲಿದು
ಗಸಣಿಗೊಳುತ ಪುರಾಂತದಲಿ ಕ
ರ್ಕಶ ಪುಳಿಂದರ ಕೇರಿಯಿರೆ ಕಂಡಲ್ಲಿಗೈತಂದ ೭

ಬಸೆ ನೆಣನ ಸುಂಟಿಗೆಯ ಹರಹಿದ
ಹಸಿಯ ತೊಗಲಿನ ತಳಿತ ಖಂಡದ
ಹಸರದುರುಗಲ ಕಾಳಿಜದ ಜಂಗಡೆಯ ಗಳಗೆಗಳ
ಬಸೆಯ ಹರವಿಯ ಸಾಲ ತೊರಳೆಗೆ
ಬೆಸಳಿಗೆಯ ಕುರಿದಲೆಯ ಹಂತಿಯ
ಕುಸುರಿದೆಲುವಿನ ಕೋದ ಮೀನಂಗಡಿಯಲೈತಂದ ೮

ಬರಬರಲು ದೂರದಲಿ ವಿಪ್ರನ
ಬರವ ಕಂಡಿದಿರಾಗಿ ಬಂದುಪ
ಚರಿಸಿದನು ಬಂದೈ ಪತಿವ್ರತೆಯೆನ್ನ ದೂರಿದಳೆ
ಧರಣಿಯಮರೋತ್ತಮರಿಗಿದು ಸಂ
ಚರಣೆ ಯೋಗ್ಯ ಸ್ಥಾನವಲ್ಲಾ
ದರಿಸುವೊಡೆ ಬಾಯೆನುತ ತನ್ನಾಲಯಕೆ ಕೊಂಡೊಯ್ದ ೯

ಒಳಗೆ ಮಂಚದ ನಡುಗುವ
ತಲೆಯ ತೆರಳಿದ ಮೈಯ್ಯ ಬೆಳುಪಿನ
ತಲೆನವಿರ ತಗ್ಗಿದ ಶರೀರದ ನೆಗ್ಗಿದವಯವದ
ತಳಿತ ಸೆರೆಗಳ ತಾರಿದಾನನ
ದಿಳಿದ ಹುಬ್ಬಿನ ಹುದಿದ ಕಣ್ಗಳ
ಚಲಿತ ವಚನದ ವೃದ್ಧರನು ತೋರಿದನು ಮುನಿಸುತಗೆ ೧೦

ಇವರು ಮಾತಾಪಿತೃಗಳೆನ್ನಯ
ಯುವತಿಯಿವಳಿವನೆನ್ನ ಮಗನಿಂ
ತಿವರ ರಕ್ಷೆಗೆ ಬೇಂಟೆಯಾಡುವೆನಡವಿಯಡವಿಯಲಿ
ಕವಲುಗೋಲಲಿ ಮೃಗಗಣವ ಕೊಂ
ದವನು ತಹೆನಂಗಡಿಯಲವ ಮಾ
ರುವೆನು ಲೋಭವನಿಲ್ಲಿ ಮಾಡೆನು ವಿಪ್ರ ಕೇಳೆಂದ ೧೧

ದೊರಕಿದನಿತಾ ದ್ರವ್ಯದಲಿ ವಿ
ಸ್ತರಿಸುವೆನು ಸಕುಟುಂಬವಿದನೇ
ಹೊರೆವೆನಾರ್ಜಿಸುವೆನು ಕುಟುಂಬಕೆ ತಕ್ಕನಿತು ಧನವ
ನಿರುತವಿದು ಮಾತಾಪಿತರ ಪರಿ
ಚರಿಯದಲಿ ರಾಗಾದಿ ದೋಷಾ
ಚರಣವದು ಮನ ವಚನ ಕಾಯದಲಿಲ್ಲ ತನಗೆಂದ ೧೨

ಭೂತ ಹಿಂಸೆಯಿದಲ್ಲ ನಮಗಿದು
ಮಾತೃಪಿತೃ ರಕ್ಷಾರ್ಥವೆಮ್ಮಯ
ಜಾತಿ ಧರ್ಮವು ಮಾಂಸ ವಿಕ್ರಯು ಮೃಗವಧಾದಿಗಳು
ಜಾತಿಧರ್ಮತ್ಯಾಗ ಕರ್ಮ ವಿ
ಜಾತಿ ಧರ್ಮ ಗ್ರಹಣವೇ ವಿ
ಖ್ಯಾತ ಕುಂಭೀಪಾಕಸಾಧನ ವಿಪ್ರ ಕೇಳೆಂದ ೧೩

ವಿತಥ ಭಾಷಿತವನ್ಯವಿತ್ತಾ
ಹೃತಿ ಪರ ವ್ಯಾಪಾದವಾತ್ಮ
ಸ್ತುತಿ ಪರಸ್ತ್ರೀವ್ಯಸನವತ್ಯಾಚಾರ ಬಕವೃತ್ತಿ
ಕೃತ ವಿನಾಶನ ಡಂಭ ಹಿಂಸಾ
ರತಿ ನಿಜಾನ್ವಯ ಧರ್ಮ ಕರ್ಮ
ಚ್ಯುತಿಗಳಿವು ದೋಷಾಂಕುರಂಗಳು ವಿಪ್ರ ಕೇಳೆಂದ ೧೪

ಸಾಂಗ ವೇದಾಧ್ಯಯನ ಸಜ್ಜನ
ಸಂಗ ಶಾಸ್ತ್ರಶ್ರವಣ ತೃಷ್ಣಾ
ಭಂಗ ಯಜನಾಧ್ಯಾನ ಮೌನವ್ರತ ಸದಾಚಾರ
ಮಾಂಗಲಿಕ ಕರ್ಮಾಭಿಯೋಗ ಕು
ಲಾಂಗನಾ ರತಿಯಾತ್ಮಚಿಂತೆ ಪ
ರಾಂಗನಾ ವೈಮುಖ್ಯವಿವು ಸದ್ಧರ್ಮ ಗತಿಯೆಂದ ೧೫

ಧನಮದವ ಸತ್ಕುಲ ಮದವ ಯೌ
ವನ ಮದವ ವಿದ್ಯಾಮದವ ಪರಿ
ಜನ ಮದವ ವೈಭವ ಮದವನಾಚಾರಪದ ಮದವ
ಮನನದಿಂ ಶ್ರವಣದಿ ನಿದಿಧ್ಯಾ
ಸನದಿನಿವಗಳನೊತ್ತಿ ವಿದ್ಯಾ
ವಿನಯ ಸೌಶೀಲ್ಯದಲಿ ನಡೆವುದು ವಿಪ್ರ ಕೇಳೆಂದ ೧೬

ನೀವು ಜಾತಿಯೊಳಧಿಕತರರಿಂ
ದಾವು ಜಾತಿವಿಹೀನರಾಗಿಯೆ
ಭಾವಶುದ್ಧಿಯಲೇ ಸ್ವಧರ್ಮಾಚಾರ ಮಾರ್ಗದಲಿ
ಆವುದೂಣೆಯವಿಲ್ಲವೀ ದ್ವಿಜ
ದೇವ ಗುರು ಪರಿಚರ್ಯದಲಿ ಸಂ
ಭಾವಿತರು ನಾವಾದೆವೆಮ್ಮನು ನೋಡಿ ನಡೆಯೆಂದ ೧೭

ಈ ಪರಿಯಲುರು ಧರ್ಮ ಕಥನಾ
ಳಾಪದಲಿ ಮುನಿಸುತಗೆ ಸಂದೇ
ಹಾಪನೋದವ ಗೈದು ತಿಳುಹಿದನಾ ಮಹೀಸುರನ
ಭೂಪ ಕೇಳ್ಗೆ ಕ್ಷತಧರ್ಮ ಕ
ಳಾಪದಲಿ ನಿನಗಿಲ್ಲ ಕೊರತೆ ಕೃ
ತಾಪರಾಧರು ಕೌರವರು ನಿರ್ನಾಮರಹರೆಂದ ೧೮

ಬಾಹುಬಲ ಬಲವಲ್ಲ ದೈವ
ದ್ರೋಹಿಗಳಿಗೆ ಸುಧರ್ಮನಿಷ್ಠುರ
ಸಾಹಸವು ಕಿರಿದಾದೊಡೆಯು ಕೊಲ್ವುರು ವಿರೋಧಿಗಳ
ಆ ಪರಾತ್ಮಜ ಹಸುಳೆತನದ
ವ್ಯೂಹದಲಿ ತಾರಕನನಿಕ್ಕನೆ
ಯಾಹವದ ಜಯಸಿರಿಯು ಧರ್ಮದ ಬೆನ್ನಲಿಹುದೆಂದ ೧೯

ಎಂದು ಮಾರ್ಕಂಡೇಯ ಮುನಿ ಯಮ
ನಂದನನನಿತಿಹಾಸ ಕಥೆಗಳ
ಲಂದವಿಟ್ಟನು ಚಿತ್ತವನು ಖಯುಖೋಡಿಗಳ ಕಳೆದು
ಕಂದು ಕಸರಿಕೆಯೇಕೆ ನಿಮಗೆ ಮು
ಕುಂದನೊಲವಿದೆ ಬಯಕೆ ಬೇರೇ
ಕೆಂದು ಮಾರ್ಕಂಡೇಯ ನಾರದರಡರಿದರು ನಭವ ೨೦

ಅರಸ ಕೇಳ್ಗೆ ದ್ರೌಪದಿಗೆ ಹರಿ
ಯರಸಿ ನುಡಿದಳು ಸತ್ಯಭಾಮಾ
ಸರಸಿಜಾನನೆ ನಗೆನುಡಿಯ ಸಮ್ಮೇಳ ಖೇಳದಲಿ
ಅರಸಿ ಕೌತುಕವೆನಗೆ ನೀನೈ
ವರಿಗೆ ಸತಿ ವಲ್ಲಭರ ಚಿತ್ತಾ
ಕರುಷಣವು ನಿನಗೆಂತು ಸೇರಿಹುದೇಕ ಭಾವದಲಿ ೨೧

ಮಂತ್ರಸಿದ್ಧಿಯೊ ಮೇಣು ಶಾಬರ
ಯಂತ್ರರಕ್ಷೆಯೊ ಮೇಣ್ ವರೌಷಧ
ತಂತ್ರತಿಲಕವೊ ರಮಣರಿವರೈವರ ವಶೀಕರಣ
ಯಂತ್ರಮಯ ಹೂಹೆಗಳು ನೃಪರೀ
ಯಂತ್ರಸೂತ್ರದ ಕುಣಿಕೆ ನಿನ್ನ ನಿ
ಯಂತ್ರಣವ ಹೇಳೌ ನಿಧಾನವನೆಂದಳಿಂದುಮುಖಿ ೨೨

ದೇವಿಯೆಂದಳು ಸತ್ಯಭಾಮಾ
ದೇವಿಯರು ಮುಗುಂದೆಯರಲಾ ನಾ
ನಾವ ಮಂತ್ರದ ತಂತ್ರ ತೊಡಕಿನ ತೋಟಿಯುಳ್ಳವಳು
ಭಾವಶುದ್ಧಿಯಲೈವರನು ಸಂ
ಭಾವಿಸುವೆನವರವರ ಚಿತ್ತದ
ಭಾವವರಿದುಪಚರಿಸುವೆನು ಚತುರತೆಯ ಚಾಳಿಯಲಿ ೨೩

ಒಲವರಿದು ಹತ್ತುವದು ಚಿತ್ತದ
ನೆಲೆಯರಿದು ನೆಮ್ಮುವುದು ಮುರಿವಿನ
ಹೊಳವರಿದು ಹಿಂಗುವುದು ಹೊಗುವುದು ಮನದೊಳೊಳವರಿದು
ಸುಳಿವರಿದು ಸೋಂಕುವುದು ತವಕಕೆ
ಬಲಿದು ಮುನಿವುದು ಸವಿಯ ಬೇಟವ
ಬೆಳಸಿ ಬೆಸವುದು ಬಗೆಯಲೆಂದಳು ನಳಿನಮುಖಿ ನಗುತ ೨೪

ರಸಿಕ ಹರಿ ಹದಿನಾರು ಸಾವಿರ
ಶಶಿಮುಖಿಯರಲಿ ಬೇಟ ಚೌಗಿನ
ದೆಸಕ ದಿಮ್ಮಿತು ಬಗೆಯ ಭಂಗವ್ಯಾಪ್ತಿ ಕೃಷ್ಣನಲಿ
ನುಸುಳು ನೆಲೆ ಡಿಳ್ಳಾಯ್ತು ಪೈಸರ
ಬೆಸುಗೆ ಬಿಗುಹುಂಳುಕೊತ್ತು ಕಲೆಗಳ
ರಸದ ಪಸರವನರಿಯಬಾರದು ವಿಗಡ ವಿಟರುಗಳ ೨೫

ನೀವು ಮುಗುದೆಯರತಿ ವಿದಗ್ಧನು
ದೇವಕೀಸುತನೆನ್ನವರು ಧ
ರ್ಮಾವಲಂಬರು ದಿಟ್ಟರಲ್ಲ ಮನೋಜ ಲೀಲೆಯಲಿ
ನೀವು ಸೊಬಗಿನ ನಿಧಿಯಲೇ ಶತ
ಸಾವಿರದ ಸತಿಯರಲಿ ಕೃಷ್ಣನ
ಜೀವವಶ್ರಮ ರತಿಯರೆಂದಳು ನಗುತ ತರಳಾಕ್ಷಿ ೨೬

ಅರಸ ಕೇಳ್ಕೆ ಸತ್ಯಭಾಮಾ
ಸರಸಿಜಾನನೆ ದ್ರುಪದ ಸುತೆಯರು
ಸರಸ ಮೇಳದಲೊಪ್ಪಿದರು ಚದುರೋಕ್ತಿ ಲೀಲೆಯಲಿ
ಹರಿ ಯುಧಿಷ್ಠಿರ ಭೀಮ ಪಾರ್ಥರು
ವರ ಮುನಿಗಳಿತಿಹಾಸಮಯ ಬಂ
ಧುರ ಕಥಾ ಕೇಳಿಯಲಿ ಕಳೆದರು ಹಲವು ದಿವಸಗಳ ೨೭

ಹಗೆಗಳಮರಾರಿಗಳು ನಮ್ಮಯ
ನಗರಿ ಶೂನ್ಯಾಸನದಲಿದ್ದುದು
ವಿಗಡ ರಾಮಾದಿಗಳು ವಿಷಯಂಗಳ ವಿನೋದಿಗಳು
ಅಗಲಲಾರೆನು ನಿಮ್ಮ ವನದೋ
ಲಗಕೆ ಬಿಡೆಯುವ ಕಾಣೆನೆಂದನು
ನಗುತ ಕರುಣಾಸಿಂಧು ಯಮನಂದನನ ಮೊಗ ನೋಡಿ ೨೮

ನುಡಿದ ಕಾಲಾವಧಿಗೆ ಜರೆ ತೆರೆ
ಯಡಗಿದವು ಜಾಣಿನಲಿ ಸತ್ಯವ
ನಡೆಸಿದಿರಿ ಕಡೆಸಾರಿಗೆಯಲುನ್ನತಿಯ ಕೆಡಿಸದಿರಿ
ಕಡುಮುಸದ ಕರ್ಣಾದಿಗಳು ಕೈ
ದುಡುಕಿದೊಡೆ ಕೈಗಾಯ್ದು ಧರ್ಮದ
ತಡಿಗೆ ಜಾರಿ ಜಯಾಧ್ವದಲಿ ಜಂಘಾಲರಹಿರೆಂದ ೨೯

ಮರೆಯಲಿಹ ಕಾಲದಲಿ ಬಲಿದೆ
ಚ್ಚರದಿಹುದು ಬೇಕಾದೊಡೆಮಗೆ
ಚ್ಚರಿಸಿ ಕಾರ್ಯಸ್ಥಿತಿಯನೇ ಚರಿಸುವುದು ನಿಮ್ಮೊಳಗೆ
ಅರಿದಿಹುದು ನೀನೆಂದು ರಾಯಂ
ಗರುಹಿ ಭೀಮಾದಿಗಳಿಗುಚಿತವ
ನೆರೆ ನುಡಿದು ದುರುಪದಿಯ ಮನ್ನಿಸಿ ಮರಳಿದನು ಪುರಕೆ ೩೦

ಅರಸಿ ಹರಿಯಾಮ್ನಾಯತತಿ ಕು
ಕ್ಕರಿಸಿದವು ಮುನಿಗಳ ಸಮಾಧಿಗೆ
ಕರುಬುವವರಾವಲ್ಲ ಕಾಣರು ನಖದ ಕೊನೆಗಳನು
ಅರಸ ತಾನೇ ಹರಿಹರಿದು ತ
ನ್ನೆರಕದವರನು ಬಿಡದೆ ಸಲಹುವ
ಕರುಣವೆಂತುಟೊ ರಾಯ ಗದುಗಿನ ವೀರ ನರಯಣನ ೩೧

ಹದಿನಾರನೆಯ ಸಂಧಿ

ಸೂ. ವಿಪಿನದಲಿ ಪಾಂಚಾಲೆ ಭಕುತಿಯ
ತಪದಲಿರೆ ದೂರ್ವಾಸನುಗ್ರವ
ನಪಹರಿಸಿ ಹರಿ ಮರಳಿ ಹೊಕ್ಕನು ದ್ವಾರಕಾಪುರಿಯ

ಕೇಳು ಜನಮೇಜಯ ಧರಿತ್ರೀ
ಪಾಲ ಪಾಂಡು ಕುಮಾರಕರು ವಿಪಿ
ನಾಂತರದೊಳನುಭವಿಸಿದರು ಸಂವತ್ಸರಾಷ್ಟಕವ
ಲೀಲೆ ಮಿಗೆಯೈತಂದು ಯಮುನಾ
ಕೂಲದಲಿ ವರತೀರ್ಥ ಸೇವಾ
ಶೀಲರಿದ್ದರು ಸಕಲ ಮುನಿಜನ ಸಹಿತ ಹರುಷದಲಿ ೧

ಆ ಸುಯೋಧನನೇಕಛತ್ರ ವಿ
ಳಾಸದುರ್ವೀ ರಾಜ್ಯಪದ ವಿ
ನ್ಯಾಸ ವಿಭವದ ಸುಖದ ಸೌಖ್ಯವನನುಭವಿಸುತಿರಲು
ಭೂಸುರವ್ರಜ ನಿಕರ ವರ ವಿ
ನ್ಯಾಸಮುನಿಜನ ಸಹಿತ ವರ ದೂ
ರ್ವಾಸ ಮುನಿಪತಿ ಬಂದು ಹೊಕ್ಕನು ಹಸ್ತಿನಾಪುರವ ೨

ಮುನಿಯ ಬರವನು ಕೇಳಿ ದುರ್ಯೋ
ಧನನು ಭೀಷ್ಮ ದ್ರೋಣ ಗೌತಮ
ರಿನತನಯ ಗುರುಸೂನು ವಿದುರಾದಿಗಳನೊಡಗೊಂಡು
ವಿನುತ ಭೂಸುರ ನಿವಹ ಕಾಂತಾ
ಜನದ ಕನ್ನಡಿ ಕಲಶ ವಾದ್ಯ
ಧ್ವನಿ ಸಹಿತಲಿದಿರಾಗಿ ಕಾಣಿಕೆಯಿತ್ತು ನಮಿಸಿದನು ೩

ವಂದನೆಯ ಕೈಗೊಳುತ ಗಂಗಾ
ನಂದನನ ಕೈವಿಡಿದು ಬರೆ ಕೃಪ
ಮುಂದೆ ಕರ್ಣಾದಿಗಳ ಗಡಣದಿ ಹೊಕ್ಕನರಮನೆಯ
ಬಂದನಂಗನೆ ಸಹಿತ ನಮಿಸಿದ
ನಂಧ ನೃಪನನು ಹರಸಿ ಹರುಷದ
ಲಂದು ಮುನಿ ಮಂಡಿಸಿದನುನ್ನತ ಸಿಂಹ ಪೀಠದಲಿ ೪

ಹೊಳೆವ ಹೊಂಗಳಶದಲಿ ತುಂಬಿದ
ಜಲದಲಾ ಮುನಿಪತಿಯ ಪಾದವ
ತೊಳೆದು ಮಧುಪರ್ಕಾದಿ ಮನ್ನಣೆಯಿಂದ ಸತ್ಕರಿಸಿ
ಬಳಿಕ ಕುಶಲವ ಕೇಳ್ದು ಮುನಿ ಸಂ
ಕುಲವನೊಲಿದಾದರಿಸಲಿತ್ತಲು
ಪೊಲವು ಮಿಗೆ ಯೆಡೆಯಾದುದಾರೋಗಣೆಗೆ ಮುನಿ ಹೊಕ್ಕ ೫

ಷಡುರಸಾನ್ನದಲಾದರಣೆಯಿಂ
ದುಡುಗೊರೆಗಳಿಂ ತುಷ್ಟಿಬಡಿಸಿದ
ಪೊಡವಿಪಾಲಕ ಋಷಿಗಳಷ್ಟಾಶೀತಿ ಸಾವಿರವ
ಕಡುಸುಖದ ಸಂನ್ಯಾಸಿ ವೇಷದ
ಮೃಡನು ಮುಂದದಲಿ ಕೌರವನ ಮೈ
ದಡವಿ ಮೆಚ್ಚಿದೆ ಮಗನೆ ಬೇಡೊಲಿದುದನು ನಿನಗೆಂದ ೬

ಅರಸ ಕೇಳಂಗೈತಳದಲಿಹ
ಪರುಷವನು ಕಲ್ಲೆಂದು ಟೆಕ್ಕೆಯ
ಹರಳಿನಲಿ ಹರುಷಿಸುವ ಮೂಢ ಮನುಷ್ಯರಂದದಲಿ
ಅರಸ ಕೌರವನೆಂದನಿನಿಬರು
ವೆರಸಿ ಪಾಂಡವರರಸಿಯುಣಲೊಡ
ನಿರದೆ ಕವಳವ ಬೇಡಿಯಭ್ಯಾಗತರು ನೀವೆಂದ ೭

ಭೂಪ ಕೇಳಿರಡುಂಟೆ ನಿನ್ನಾ
ಳಾಪವನು ಕೈಕೊಂಡೆನೆನುತ ಮ
ಹಾ ಪರಾಕ್ರಮಿಯೋಳಲೊಡನೆದ್ದು ದು ನೃಪಸ್ತೋಮ
ತಾಪಸರು ಬಳಿವಿಡಿದು ಬರೆ ಬಳಿ
ಕಾ ಪುರವ ಹೊರವಂಟು ಭವನಿ
ರ್ಲೇಪ ಭೀಷ್ಮ ದ್ರೋಣರನು ಕಳುಹಿದನು ಮನೆಗಳಿಗೆ ೮

ಆಗಡು ಕೌರವನೊಡ್ಡಿದನಲಾ
ವಿಗಡವನು ಮುನಿಯುಗ್ರ ರೋಷದ
ಸೆಗಳಿಕೆಗೆ ಪಾಂಡವರು ಸವಿದುತ್ತಾದರಕಟೆನುತ
ದುಗುಡದಲಿ ಗಾಂಗೇಯ ವಿದುರಾ
ದಿಗಳು ಮನೆಯೊಳಗಿತ್ತ ಕೌರವ
ನಗುತ ಕರ್ಣಾದಿಗಳ ಗಡಣದಿ ಹೊಕ್ಕನರಮನೆಯ ೯

ಮರುದಿವಸ ಸತಿಯುಂಡ ಸಮಯವಸ
ನರಿದು ಮುನಿಪತಿ ಬರಲು ಕಪಟದ
ನಿರಿಗೆಯನು ಬಲ್ಲನೆ ಯುಧಿಷ್ಠಿರನೆದ್ದು ಸಭೆಸಹಿತ
ಕಿರಿದೆಡೆಯಲಿದಿರಾಗಿ ಭಕುತಿಯ
ಹೊರಿಗೆಯಲಿ ಕುಸಿವಂತೆ ನೃಪ ಬಂ
ದೆರಗಿದನು ಮುನಿವರಗೆ ತನ್ನನುಜಾತರೊಡಗೂಡಿ ೧೦

ಕುಶಲವೇ ನಿಮಗೆನುತಲೈವರ
ನೊಸಲ ನಿಜಕರತಳದಲೆತ್ತುತ
ಲೊಸೆದು ಧೌಮ್ಯಾದ್ಯಖಿಳ ಭೂಸುರ ಜನವ ಮನ್ನಿಸುತ
ಹೊಸ ಕುಶೆಯ ಪೀಠದಲಿ ಮುನಿವೇ
ಷ್ಟಿಸಿದನರ್ಘ್ಯಾಚಮನ ಪಾದ್ಯ
ಪ್ರಸರ ಮಧುಪರ್ಕಗಳ ಮಾಡಿ ಮಹೀಶನಿಂತೆಂದ ೧೧

ದೇಶ ಕಾನನ ವಸನ ವಲ್ಕಲ
ಭೂಸುರವ್ರಜ ಆತ್ಮಜನವು ಪ
ಲಾಶ ಪರ್ಣವೆ ಪಾತ್ರ ಭೋಜನ ಕಂದಮೂಲಫಲ
ಈ ಸರಿತ್ಪಾನೀಯ ಮಜ್ಜನ
ವಾಸವೇ ಗುರುಭವನ ರಾಜ್ಯ ವಿ
ಲಾಸವೆಮ್ಮದು ಜೀಯ ಚಿತ್ತೈಸೆಂದ ಯಮಸೂನು ೧೨

ಧಾರುಣೀಪತಿ ಹೇಳಬಹುದುಪ
ಚಾರವೇಕಿದು ರಾಜ್ಯಪದ ವಿ
ಸ್ತಾರವಾದುದು ರಾಜಋಷಿ ನಿನಗಾರು ಸರಿಯಿನ್ನು
ಸಾರೆಯಾಯ್ತುಸ್ತಮಯ ಸಮಯಕು
ಧಾರವಹ್ನಿಯ ವಿವಿಧ ಪೀಡಾ
ಕಾರಕುಂಟೆ ಚಿಕಿತ್ಸೆಯೆಂದನು ಮುನಿ ನೃಪಾಲಂಗೆ ೧೩

ಆವ ಜನ್ಮದ ಸುಕೃತಫಲ ಸಂ
ಭಾವಿಸಿದುದೊ ನಿಮ್ಮ ಬರವನ
ದಾವ ಪಡೆವನು ಕೊಟ್ಟೆನೆಂದನು ನೃಪತಿ ಕೈಮುಗಿದು
ಆ ವಿಗಡ ಮುನಿ ಬಳಿಕನುಷ್ಠಾ
ನಾವಲಂಬನಕತ್ತ ಯಮುನಾ
ದೇವಿಯರ ಹೊಗಲಿತ್ತ ನೃಪ ಕರೆಸಿದನು ದುರುಪದಿಯ ೧೪

ಅರಸಿಯಾರೋಗಿಸಿದ ಭಾವವ
ಬರವಿನಲಿ ನೃಪನರಿದು ಅರಸನ
ಹರುಷವಡಗಿತು ಧೈರ್ಯ ಸುಕ್ಕಿತು ಉಷ್ಣನಯನಾಂಬು
ಉರಿ ಹೊಡೆದ ಕೆಂದಾವರೆಯವೋಲ್
ಕರುಕುವಡೆದುದು ಮುಖ ಕಪೋಲಕೆ
ಕರವನಿಟ್ಟನು ಮುಂದೆಗೆಟ್ಟು ಮಹೀಶ ಚಿಂತಿಸಿದ ೧೫

ತಂಡುಕಿ ಸುರಪನ ಸಿರಿಯ ಶರಧಿಯ
ಮಡುವಿನಲಿ ಹಾಯ್ಕಿದನು ರೋಷವ
ಹಿಡಿದರೀಗಳೆ ಸುಟ್ಟು ಬೊಟ್ಟಿಡುವನು ಜಗತ್ರಯವ
ಮೃಡ ಮುನಿದು ಕೋಪಿಸಲಿ ಶಾಪವ
ಕೊಡಲಿ ನಾನದಕಂಜೆನೆನ್ನಯ
ನುಡಿಗನೃತ ಸಂಭಾವಿಸಿತಲಾ ಕೆಟ್ಟೆ ನಾನೆಂದ ೧೬

ಏನಿದೇನೆಲೆ ನೃಪತಿ ಚಿತ್ತ
ಗ್ಲಾನಿಯನು ಬಿಡು ನಿನ್ನ ವಚನಕೆ
ಹಾನಿಯುಂಟೇ ಸದೆವೆ ಸುರಪನ ಸಗ್ಗ ಗಿಗ್ಗವನು
ಆನೆವರಿವರಿದೆಳೆದು ತಹೆ ಸುರ
ಧೇನುವನು ನಿಮ್ಮಡಿಗೆನುತ ಪವ
ಮಾನಸುತ ನಿಜಗದೆಯ ಜಡಿದನು ಬೇಗ ಬೆಸಸೆನುತ ೧೭

ಬರಿಯ ನುಡಿಯೇಕಕಟ ನಿಮ್ಮಯ
ಹೊರಿಗೆವಾಳನು ಕೃಷ್ಣನಾತನ
ಮರೆಯ ಹೊಕ್ಕರಿಗುಂಟೆ ದೋಷ ದರಿದ್ರ ಮೃತ್ಯುಭಯ
ಮರೆದಿರೈ ಸೆಳೆಸೀರೆಯಲಿ ಸತಿ
ಯೊರಲಲಕ್ಷಯವಿತ್ತು ತನ್ನನು
ಮೆರೆದ ಮಹಿಮಾರ್ಣವನ ಭಜಿಸುವುದೆಂದನಾ ಧೌಮ್ಯ ೧೮

ಕ್ಷತ್ರತೇಜದ ತೀವ್ರಪಾತ ನಿ
ಮಿತ್ತ ನಿಮಗಂಜನು ಸುರೇಶ್ವರ
ಸತ್ಯ ಕೆಡುವೊಡೆ ಸಾರೆಯಿದೆಲಾ ಕೌರವನ ನಗರ
ಸತ್ಯಮಾರಿಯ ಸುರಭಿಗಳುಪಿದ
ಕಾರ್ತವೀರ್ಯಾರ್ಜುನನ ಕಥೆಯನು
ಮತ್ತೆ ಹೇಳುವೆ ಭಜಿಸು ಕೃಷ್ಣನನೆಂದನಾ ಧೌಮ್ಯ ೧೯

ನಾಮವನು ನಂಬಿದ ಮಹಾತ್ಮರ
ನಾಮವನು ನೆನೆದವರು ಪಡೆವರು
ಕಾಮಿತವನೆಲೆ ನಿಮ್ಮ ನೆಲೆ ನಿಮಗರಿಯಬಾರದೆಲೆ
ನಾಮ ನಿಮ್ಮಲಿ ಕೃಪೆ ವಿಶೇಷವು
ಕಾಮಿನಿಗೆ ಕರಗುವನು ಕೃಷ್ಣನು
ಯಿಾ ಮಹಿಳೆ ಭಜಿಸುವುದು ಬೇಗದಲೆಂದನಾ ಧೌಮ್ಯ ೨೦

ಭೂಸುರರ ಕಳವಳವ ನೃಪನಾ
ಕ್ಲೇಶವನು ಪವಮಾನಸುತನಾ
ಕ್ರೋಶವನು ನರನಾಟವನು ಮಾದ್ರೇಯರುಪಟಳವ
ಆ ಸರೋಜಾನನೆ ನಿರೀಕ್ಷಿಸು
ತಾಸುರದ ದುಃಖದಲಿ ಮುನಿ ಮು
ತ್ತ್ರೋಪದೇಶದ ಬಲುಮೆಯಿಂದವೆ ನೆನೆದಳಚ್ಯುತನ ೨೧

ಮುಗುದೆ ಮಿಗೆ ನಿಂದಿರ್ದು ಸಮಪದ
ಯುಗಳದಲಿ ಸೂರ್ಯನ ನಿರೀಕ್ಷಿಸಿ
ಮುಗಿದ ಕೈಗಳ ಮುಗುಳೆಯೆವೆಯನು ಮುಚ್ಚಿ ನಾಸಿಕದ
ನೆಗಹಿ ಪುಳಕಾಂಬುಗಳು ಮೈಯಲಿ
ಬಿಗಿದು ಮೊನಲಾಗಿರಲು ಹಿಮ್ಮಡಿ
ಗೊಗುವ ಕುಂತಳದಬಲೆ ಕಾಮಿಸಿ ನೆನೆದಳಚ್ಯುತನ ೨೨

ಶ್ರೀರಮಾವರ ದೈತ್ಯಕುಲ ಸಂ
ಹಾರ ಭಕ್ತಜನಾರ್ತಿಹರ ಭವ
ದೂರ ಸಕಲ ಚರಚರಾತ್ಮಕ ದುಷ್ಟ ಕಂಸಹರ
ಚಾರುಗುಣ ಗಂಭೀರ ಕರುಣಾ
ಕಾರ ವಿಹಿತ ವಿಚಾರ ಪಾರಾ
ವಾರ ಹರಿ ಮೈದೋರೆನುತ ಹಲುಬಿದಳು ಲಲಿತಾಂಗಿ ೨೩

ನೀಲಕಂಠನ ನೇತ್ರವಹ್ನಿ
ಜ್ವಾಲೆಗಾಹುತಿಯಾಗಿ ಮಗ್ಗಿದ
ಕಾಲ ಕಾಮನ ಪಥವ ಪಡೆದರು ಪಾಂಡು ನಂದನರು
ಏಳು ದಿಟವೈಯೆನ್ನ ನುಡಿಯನು
ಪಾಲಿಸೈ ಸಂಕಲ್ಪವಳಿದೊಡೆ
ಹಾಳು ಹೊರುವುದು ಕೃಷ್ಣ ಮೈದೋರೆಂದಳಿಂದುಮುಖಿ ೨೪

ಹಿಂದೆ ನಾನಾಪಾಯದಿರುಬಿನ
ಬಂಧನವ ಬಿಡಿಸಿದೆಯಲ್ಲೈ ಗೋ
ವಿಂದ ಶರಣಾನಂದಕಂದ ಮುಕುಂದ ಗುಣವೃಂದ
ಇಂದು ರುದ್ರನು ತಪ್ಪು ಸಾಧಿಸ
ಬಂದರೆಮ್ಮನು ಕಾವರಾರೆಲೆ
ತಂದೆ ನೀನೇ ಗತಿಯೆನುತ ಹಲುಬಿದಳು ಲಲಿತಾಂಗಿ ೨೫

ಅರಸುವೆನೆ ಪರಿಪೂರ್ಣ ಕೇಳೆಂ
ದರುಹುವೆನೆ ಸರ್ವಜ್ಞ ಸಾಕೆಂ
ದೊರಲಲಾರೆನು ತಾಯಿ ನೀ ನಿಮಗಾವು ಶಿಶುಗಳಲೆ
ಕುರುಹುದೋರೈ ಕೃಷ್ಣ ಕರುಣವ
ಕರೆದು ಕಳೆಯಲು ಭಕುತರಾರ್ತಿಯ
ನರಿವ ವಿಪುಳ ಘರಟ್ಟರಾರುಂಟೆಂದಳಿಂದುಮುಖಿ ೨೬

ಮುನ್ನವೇ ಮುನಿದಂಬರೀಷನ
ಬೆನ್ನನೆತ್ತಲು ಹರನ ನೇತ್ರದ
ವಹ್ನಿಯೊಳಗುದಯಿಸಿದ ಕೆಂಗಿಡಿ ಸುಡಲು ಕಂಗೆಡುತ
ಉನ್ನತೋನ್ನತ ಕೃಷ್ಣ ರಕ್ಷಿಸು
ಪನ್ನಗಾಸನ ಹರಿಯೆ ರಕ್ಷಿಸು
ಅನ್ಯಗತಿಯೆನಗಾರೆನುತ ಹಲುಬಿದನು ಭೂಪಾಲ ೨೭

ಬಳಿಕ ನಿನ್ನಯ ವರ ಸುದರ್ಶನ
ಸುಳಿವುದೋರಲು ಕೋಟಿ ಸೂರ್ಯರ
ಬೆಳಗು ಬೀರಲು ಹೊತ್ತಿವುರಿವುರಿ ಲೋಕ ಮೂರರಲಿ
ಬಲುಂಬಿಸಲು ಬಾಯ್ಗಾಂತ ಚಂದ್ರಿಕೆ
ವೆಳಗೆನಲು ಘನ ರೋಷವಹ್ನಿಯು
ಬೆಳಗು ಬೀತುದು ಚಕಿತ ಚಂದ್ರಮನಾದ ದೂರ್ವಾಸ ೨೮

ಆಗಿದು ಬೆಂಬತ್ತಿದೊಡೆ ಮುನಿ ಮೂ
ಜಗವನೆಲ್ಲವ ತೊಳಲಿ ಭಕುತಿಯ
ಬಿಗುಹಿನಲಿ ಸುತಿಸಾರೂಪ್ಯಮಾನದಲಿ
ಹೊಗಳಿದೊಡೆ ಹಿಂಗಿದವಲಾ ಸುರ
ರುಗಳುಘೇಯೆನಲಂಬರೀಷನ
ಬೆಗಡ ಬಿಡಿಸಿದ ಕೃಷ್ಣ ಮೈದೋರೆಂದಳಿಂದುಮುಖಿ ೨೯

ಅವನಿಪತಿ ಕೇಳಖಿಳ ನಿಗಮ
ಸ್ತವಕೆ ತಾನೆಡೆಗುಡದ ಮಹಿಮಾ
ರ್ಣವನನೇಸು ಭವಂಗಳಲಿ ಭಜಿಸಿದರೊ ನಿನ್ನವರು
ಯುವತಿಯಕ್ಕೆಯ ಸೈರಿಸದೆ ಯಾ
ದವ ಶಿರೋಮಣಿ ಸುಳಿದನಾ ಪಾಂ
ಡವರು ಕಂಡರು ದೂರದಲಿ ಖಗರಾಜಕೇತನವ ೩೦

ಮುಗುಳು ನಗೆಗಳ ಹೊಂಗುವಂಗದ
ನಗೆಮೊಗದೊಳಾನಂದ ಬಿಂದುಗ
ಳೊಗುವ ಕಂಗಳ ಹೊತ್ತ ಹರುಷಸ್ಪಂದ ಸಂಪುಟದ
ಬಗೆಯ ಬೆರಸದ ಪರವಶದೊಳಾ
ನಗೆಯೊಳೆಡೆಗೊಂಡಮಳ ಜನ್ಮದ
ಮುಗುದ ಪಾಂಡವರೆರಗಿದರು ಧೌಮ್ಯಾದಿಗಳು ಸಹಿತ ೩೧

ರಥವನಿಳಿದಸುರಾರಿ ಸುಮನೋ
ರಥವಿಡಿದು ಬಪ್ಪಂತೆ ಕುಂತೀ
ಸುತರ ನಿಜಭುಜವಾರೆ ತಕ್ಕೈಸಿದನು ಹರುಷದಲಿ
ಕ್ಷಿತಿಯಮರರಾಶೀರ್ವಚನ ಸಂ
ಸ್ತುತಿಗೆ ತಲೆವಾಗುತ್ತ ಮಿಗೆ ದುರು
ಪತಿಯ ಹೊರೆಗೈದಿದನುಘೇಯೆಂದುದು ಸುರಸ್ತೋಮ ೩೨

ಧ್ಯಾನಗೋಚರನಾಗಿ ವನಿತೆಯು
ಮಾನಿಸದಲಿಹ ಪರಮಹಂಸನು
ಮಾನುಷಾಕೃತಿಯಾಗಿ ತೋರಿದ ಬಾಹ್ಯರಚನೆಯಲಿ
ಮಾನಿನಿಯ ಮೈದಡಹಿ ಚಿಂತೆಯು
ದೇನು ತಂಗಿ ಲತಾಂಗಿ ಹೇಳೌ
ಮೌನ ಮುದ್ರೆಯದೇನೆನಲು ಕಂದೆರೆದಳಿಂದುಮುಖಿ ೩೩

ಉಬ್ಬಿದಳು ಹರುಷದಲಿ ದುಗುಡದ
ಕೊಬ್ಬು ಮುರಿದುದು ಪುಳಕ ವಾರಿಯೊ
ಳೊಬ್ಬುಳಿಯೊಳೊಡೆಹಾಯ್ದು ನಿಂದುವು ನಯನವಾರಿಗಳು
ಸಬ್ಬತಾಲತೆ ಹೂತು ಹಸರಿಸಿ
ಹಬ್ಬಿ ಫಲವಾದಂತೆ ಕಾಯುವ
ನಿಬ್ಬರದಲೀಡಾಡಿದಳು ಹರಿಪದಪಯೋಜದಲಿ ೩೪

ಧರಣಿಯನು ಬಿಡದಳೆದು ಹೆಚ್ಚಿದ
ಚರಣವಿದು ಸುರನದಿಯ ಸೃಜಿಸಿದ
ಚರಣವಿದು ಕಲ್ಲಾದಹಲ್ಯಾಶಾಪ ನಿರುಹರಣ
ಚರಣವಿದು ಕಾಳಿಂಗ ಮರ್ದನ
ಚರಣವಿದು ಶಕಟಪ್ರಭಂಜನ
ಚರಣವಿದೆಲಾಯೆನುತ ಕೊಂಡಾಡಿದಳು ಹರಿಪದವ ೩೫

ಸ್ತೋತ್ರಕೀಗಳು ಸಮಯವೇ ಹೇ
ಳೀತಕೀ ಸ್ತುತಿ ತಂಗಿ ಚಿತ್ತದೊ
ಳಾತುರವಿದೇನೆನುತ ಹಿಡಿದೆತ್ತಿದನು ಮಸ್ತಕವ
ಬೀತ ತರು ಶುಕ ನಿಕರಕೀವುದೆ
ಔತಣವ ಸಲೆ ತುಷ್ಟಿಬಡಿಸುವ
ನೀತಿಯನು ನೀ ಬಲ್ಲೆಯೆಂದಳು ಕಮಲಮುಖಿ ನಗುತ ೩೬

ಶೌರಿ ಕೇಳ್ ಸಾಕ್ಷಾತು ಶಿವನವ
ತಾರವಹ ದೂರ್ವಾಸಮುನಿ ಪರಿ
ವಾರ ಸಹಿತೈತಂದೊಡಭ್ಯಾಗತೆಯ ನೃಪನಿತ್ತ
ತೀರಿತಕ್ಷಯದನ್ನವಿಂದು ಮ
ಹಾ ಋಷಿಯ ಘನ ರೋಷವಹ್ನಿಗು
ಪಾರ ನಿನ್ನಯ ಮೈದುನನ ತನುವೆಂದಳಿಂದುಮುಖಿ ೩೭

ನಾವು ಹಸಿದೈತಂದರೀ ಪರಿ
ದೇವಿ ನಾನಾ ದೂರ ದೂರುವು
ದಾವುದುಚಿತವು ಹೇಳೆನಲು ನಡನಡುಗಿ ಕೈ ಮುಗಿದು
ದೇವ ನಿಮ್ಮಯ ಹಸಿವು ಕಳೆವೊಡೆ
ಭಾವಶುದ್ಧಿಯ ಭಕುತಿ ಬೇಹುದು
ನಾವು ಚಂಚಲ ಚಿತ್ತರೆಂದಳು ಕಮಲಮುಖಿ ನಗುತ ೩೮

ಮಾತುಗಳು ಸೊಗಸುವುದೆ ಹಸಿವಿಂ
ದಾತುರರಿಗೆಲೆ ತಂಗಿ ತಾರೌ
ಪ್ರೀತಿವಿದರೊಲಿತ್ತುದೇ ಕ್ಷುಧೆಗಮೃತ ಪುಂಜವದು
ಏತಕೀ ಜಂಜಡವೆನಲು ಜಲ
ಜಾತಮುಖಿ ಕಂಪಿಸುತ ಕುಮುದಾ
ರಾತಿ ಕೊಟ್ಟಾ ಸ್ಥಾಲಿಯನು ತಡವಿದಳು ಕರದಿಂದ ೩೯

ಕಂಡು ಕಿಂಚಿತ್ಶಾಕಶೇಷವ
ಕೊಂಡು ಬಂದೊಡೆ ಕೃಷ್ಣನದ ಕೈ
ಗೊಂಡು ಸವಿದನು ತಣಿದು ತಲೆದೂಗಿದನು ತೇಗಿದನು
ಪಾಂಡವರ ಪತಿಕರಿಸಿ ನಲಿವುತ
ಜಾಂಡ ನುಡಿದನು ಹೃದಯ ಕ್ಷುಧೆಯನು
ಖಂಡಿಸಿದೆಲಾಯೆನುತ ಕೊಂಡಾಡಿದನು ದ್ರೌಪದಿಯ ೪೦

ಅರಸ ಕೇಳೀಚೆಯಲಿ ಮನದು
ಬ್ಬರದ ತನುವಿನ ತಳಿತ ರೋಮದ
ಭರದ ತುಷ್ಟಿಯ ಬಳಿಯ ತೇಗುವ ಹಿಗ್ಗುವಳ್ಳೆಗಳ
ಕೊರಳಿಗಡರುವ ಹೊಟ್ಟೆಗಳ ಋಷಿ
ವರರು ಸಹ ದೂರ್ವಾಸ ಮುನಿಯು
ಚ್ಚರಿಯುವಾಳುತ ತನ್ನೊಳರಿದನು ಮುರಹರನ ಬರವ ೪೧

ಬಂದನೇ ಗೋವಿಂದ ಭಕುತರ
ಬಂಧುವಲ್ಲಾತನೊಳು ಮನಸಿಗೆ
ಸಂದ ಮನುಜರ ಸೆಣಸೆ ಮಾಣಿಪರಾರು ಭುವನದಲಿ
ಎಂದೆನುತ ದೂರ್ವಾಸ ಮುನಿಪತಿ
ಬಂದು ಕಂಡನು ಪರ್ಣಶಾಲೆಯ
ಲಂದು ಕುಂತೀಸುತ ಸಹಾಯನ ಕೃಷ್ಣರಾಯನನು ೪೨

ಕಾಣುತಿದಿರೆದ್ದಸುರ ಮರ್ದನ
ಕಾಣಿಕೆಯ ಕೊಟ್ಟೆರಗಿ ಹೋ ಹೋ
ಸ್ಥಾಣುವಿನ ಬರವೆತ್ತಣಿಂದಾಯ್ತೆನುತ ಕೈಮುಗಿಯೆ
ಮಾಣು ಮಾಧವ ನಿಲ್ಲು ಮಾನವ
ನಾಣೆಯದ ನಾಟಕದ ನುಡಿಯಿದು
ಜಾಣ ನೀನಹೆಯೆನುತ ಮುನಿ ಹಾಯ್ದಪ್ಪಿದನು ಹರಿಯ ೪೩

ಯತಿಗಳೈತರೆ ಗಾರುಹತ್ಯ
ಪ್ರತತಿ ವಂದಿಸಬೇಹುದಾ ಪ
ದ್ಧತಿಯ ತೋರುವ ಪಂಥವೈಸಲೆ ನೀನು ಮನ್ನಿಪುದು
ಅತಿ ಸಹಜವೈ ಕೃಷ್ಣ ಕುಳ್ಳಿರು
ಸತಿಶಿರೋಮಣಿ ಕುಳ್ಳಿರೈ ವ್ಯಾ
ಹೃತಗೃಹಸ್ಥನು ಕುಳ್ಳಿರೆನುತವೆ ಮುನಿಪ ಮಂಡಿಸಿದ ೪೪

ತುಂಬಿ ಕುಳ್ಳಿರ್ದಖಿಳ ಮುನಿ ನಿಕು
ರುಂಬ ಸಭೆಯೊಳಗಿದ್ದ ಮುನಿಪಂ
ಗಂಬುಜಾನನೆ ನಮಿಸೆ ಹರಸಿದನೈದೆಯಾಗೆನುತ
ಹಂಬಲಿಸುತಿಹ ನಿಗಮ ಶಾಸ್ತ್ರಗ
ಳಿಂಬುಗಾಣದ ಗಾಢ ದೈವದ
ಬೆಂಬಳಿಯಲಿರಲಿನ್ನದಾವುದಸಾಧ್ಯ ನಿಮಗೆಂದ ೪೫

ಮೈ ವಶವ ಮಾಡದಿರಲೇ ಪರ
ದೈವವನು ಕುರುಕುಲದ ಬೇರನು
ಕೊಯ್ವನೀ ಹರಿ ಬಳಿಸಲಿಸಿ ಭೀಮಾರ್ಜುನಾಸ್ತ್ರದಲಿ
ಕಾವನೈ ನಿಮ್ಮೈವರನು ಕೈ
ಗಾವನೇ ವರರಾಜ್ಯ ಲಕುಮಿಯ
ಕೈವಿಡಿವ ಸಂಕಲ್ಪ ಸಿದ್ಧಿಪುದೆಂದನಾ ಮುನಿಪ ೪೬

ಎಲೆ ಮುನೀಶ್ವರ ನಿಮ್ಮ ನುಡಿಯ
ಸ್ಖಲಿತವಿದು ಇಹಪರದ ಗತಿ ನಿ
ನ್ನೊಲವು ಕೃಷ್ಣನ ಕೂರ್ಮೆಯಿರಲಿನ್ನಾವುದರಿದೆಮಗೆ
ನಳಿನಸಖಸಪರಾಂಬು ರಾಸಿಯ
ನಿಲುಕುತೈದನೆ ಹಸಿದುದೀ ಮುನಿ
ಬಳಗವಾರೋಗಣೆಗೆ ಚಿತ್ತವಿಸೆಂದ ಯಮಸೂನು ೪೭

ಬೇರು ನೀರುಂಡಾಗ ದಣಿಯವೆ
ಭೂರುಹದ ಶಾಖೋಪಶಾಖೆಗ
ಳೋರಣೆಯ ನಿಜದೇಹವಂಗೋಪಾಂಗನೆಂದೆನಿಪ
ಶ್ರೀರಮಣ ಸಂತುಷ್ಟನಾದೊಡೆ
ಬೇರೆ ಭೋಜನವೆಮಗೆ ಬೇಹುದೆ
ಭೂರಮಣ ಕೇಳೆನುತ ಮತ್ತಿಂತೆಂದನಾ ಮುನಿಪ ೪೮

ಮೃಷ್ಟಭೋಜನದಿಂದ ನಾವ್ ಸಂ
ತುಷ್ಟರಾಗೊಲಿದುದನು ಬೇಡೆನೆ
ದುಷ್ಟ ಕೌರವ ನಮ್ಮನಟ್ಟಿದ ಧೂರ್ತವಿದ್ಯೆಯಲಿ
ಕಷ್ಟವೇ ಕೈಗಟ್ಟಿತಲ್ಲದೆ
ಕೆಟ್ಟರೇ ಪಾಂಡವರು ಹರಿಪದ
ನಿಷ್ಠರನು ನಿಲುಕುವನೆ ದುರ್ಜನನೆಂದನಾ ಮುನಿಪ ೪೯

ಎಂದು ಹರಿಯನು ಹೊಗಳಿ ನಾನಾ
ಚಂದದಲಿ ಪಾಂಡವರ ತಿಳುಹಿ ಮು
ನೀಂದ್ರ ತನ್ನಾಶ್ರಮಕೆ ಸರಿದನು ತಾಪಸರು ಸಹಿತ
ಅಂದು ಕುಂತೀ ನಂದನರಿಗಾ
ನಂದ ಸುಖವನು ಕರೆದು ದೇವ ಮು
ಕುಂದ ಬಿಜಯಂಗೈದು ಹೊಕ್ಕನು ದೋರಕಾಪುರಿಯ ೫೦

ಹದಿನೇಳನೆಯ ಸಂಧಿ

ಸೂ. ರಾಯ ಕುರುಪತಿ ವಿದುರ ಗುರು ಗಾಂ
ಗೇಯ ಕೃಪರಲ್ಲೆನಲು ಪಾಂಡವ
ರಾಯ ವಿಪಿನಕೆ ಘೋಷಯಾತ್ರೆಯ ನೆವದಲೈತಂದ

ಕೇಳು ಜನಮೇಜಯ ಧರಿತ್ರೀ
ಪಾಲ ನಿಜನಗರಕ್ಕೆ ಲಕ್ಷ್ಮೀ
ಲೋಲ ಬಿಜಯಂಗೈದನಿತ್ತಲು ಪಾಂಡು ನಂದನರು
ಮೇಲು ದುಗುಡದ ಮುಖದ ಚಿಂತೆಯ
ಜಾಳಿಗೆಯ ಜಡಮನದಲಿದ್ದರು
ಸೂಳು ಸುಯ್ಲಿನ ಹೊಯ್ಲ ನಾಸಾಪುಟದ ಬೆರಳಿನಲಿ ೧

ಸೂರೆವೋದುದು ರಾಜ್ಯಸಿರಿ ಮು
ಮ್ಮಾರುವೋದುದು ಲಜ್ಜೆ ಬೆಟ್ಟವ
ಸೇರಿ ಕಾನನಕಿಳಿದು ವನದಿಂದಡರಿ ಗಿರಿಕುಲವ
ತಾರತಟ್ಟಿಗೆ ಹಾಯ್ವ ಸುಖಮನ
ದೇರು ಮಸಗಿ ಮುರಾರಿ ಕೃಪೆಯನು
ತೋರಿಯಡಗಿದನಕಟ ವಿಧಿಯೆಂದಳಲಿದನು ಭೂಪ ೨

ಎಹಗೆ ಸೈರಿಸಿ ನಿಂದರೋ ವ್ರಜ
ಮಹಿಳೆಯರು ಕೃಷ್ಣಾಂಘ್ರಿ ವಿರಹದ
ದಹನದಾಪಸ್ತಂಭಕೌಷಧ ದಾನ ಶೌಂಡರಿಗೆ
ಅಹಹ ಕೊಡುವೆನು ನನ್ನನೆನುತು
ಮ್ಮಹದ ಮೊನೆ ಮುರಿದವನಿಪತಿ ನಿ
ಸ್ಪೃಹೆಯಲಿದ್ದನು ರಾಜಕಾರ್ಯ ವಿಹಾರ ಲೀಲೆಗಳ ೩

ಅರಸ ಕೇಳೈ ಹಸ್ತಿನಾಪುರ
ವರಕೆ ಕಾಮ್ಯಕವನದಿನೊಬ್ಬನು
ಧರಣಿಸುರನೈತಂದು ಕರ್ಣಾದಿಗಳ ಮನೆಗಳಲಿ
ಇರಲಿರಲು ಧೃತರಾಷ್ಟ್ರ ಭೂಪತಿ
ಕರೆಸಿ ಬೆಸಗೊಂಡನು ಯುಧಿಷ್ಠಿರ
ನಿರವನಟವೀತಟ ಪರಿಭ್ರಮಣೈಕ ಭೀಷಣವ ೪

ವಿವಿಧ ವನ ಪರಿಯಟಣದಾಯಾ
ಸವನು ತತ್ಪರಿಸರದ ಕಂಟಕ
ನಿವಹವನು ದಾನವರ ದಕ್ಕಡತನದ ದಟ್ಟಣೆಯ
ಅವಚಿದಾಪತ್ತಿನ ಮನಃಖೇ
ದವನು ಖೋಡಿಯ ಖತಿಯ ಲಜ್ಜಾ
ವಿವರಣವನರುಹಿದನು ಧೃತರಾಷ್ಟ್ರಾವನೀಶಂಗೆ ೫

ಈ ವಿಧಿಯೆ ಪಾಂಡವರಿಗಕಟಾ
ಸಾವು ಸೇರದು ತನಗೆ ತಾ ಮು
ನ್ನಾವ ನೋಹಿಯನಳಿದೆನೋ ಭವಭವ ಸಹಸ್ರದಲಿ
ಈ ವಿಲಾಸವನೀ ವಿಭವ ಸಂ
ಭಾವನೆಯನೀ ಪದವನೀ ಪು
ತ್ರಾವಳಿಯ ಸುಡಲೆನುತ ಮಿಗೆ ಮರುಗಿದನು ಧೃತರಾಷ್ಟ್ರ ೬

ಮರಳಿ ಮರಳಿ ಯುಧಿಷ್ಠಿರನ ಮನ
ದಿರವ ಭೀಮನ ಖತಿಯ ಪಾರ್ಥನ
ಪರಿಯ ನಕುಲನ ನಿಲವನಾ ಸಹದೇವನಾಯತವ
ತರಳೆಯಂಬೆಯನಾ ಪುರೋಹಿತ
ವರನ ಖೇದವನಾ ಮುನೀಂದ್ರನ
ಪರಗತಿಯನಡಿಗಡಿಗೆ ಕೇಳಿದು ಮರುಗಿದನು ನೃಪತಿ ೭

ಅಳಲುವೀ ಧೃತರಾಷ್ಟ್ರನುರು ಕಳ
ಕಳವ ಕೇಳಿದು ಕರ್ಣ ಶಕುನಿಗ
ಳುಲಿದು ತಂಬುಲ ಸೂಸೆ ನಕ್ಕರು ಹೊಯ್ದು ಕರತಳವ
ಖಳಶಿರೋಮಣಿಗಳು ಮಹೀಶನ
ನಿಳಯಕೈತಂದರು ಸುಲೋಚನ
ಜಲವ ಸೆರಗಿನೊಳೊರಸಿ ನುಡಿದರು ಖೇದವೇಕೆನುತ ೮

ಖೇದವೇಕೆಂದೇನು ಮಕ್ಕಳು
ಬೀದಿಗರುವಾದರು ವನಾಂತದ
ಲಾದ ಚಿತ್ರವ್ಯಥೆಯ ಕೇಳಿದು ಬೆಂದುದೆನ್ನೊಡಲು
ಆ ದಿವಾಕರನಂತೆ ನಿಚ್ಚಲು
ಕಾದುದುದಯಾಸ್ತಮಯದಲಿ ದನು
ಜಾದಿ ಖಳರೊಡನಟವಿಗೋಟಲೆಯೆಂದು ಬಿಸುಸುಯ್ದ ೯

ಈ ಕುಮಾರಕರಲ್ಲಲೇ ಕುಂ
ತೀ ಕುಮಾರರು ನವೆವುತಿದ್ದರೆ
ಸಾಕು ಸಾಕಳಲೇಕೆ ಸತ್ವಾಧಿಕರು ಸಜ್ಜನರು
ಈ ಕುರು ಕ್ಷಿತಿಪತಿಯೊಳನ್ಯಾ
ಯೈಕ ಲವವುಂಟೇ ವಿಚಾರಿಸಿ
ಶೋಕವನು ಬಿಡಿ ಬಯಲ ಡೊಂಬೇಕೆಂದನಾ ಶಕುನಿ ೧೦

ವಿಷಯಲಂಪಟರಕ್ಷ ಲೀಲಾ
ವ್ಯಸನಕೋಸುಗ ವೊತ್ತೆಯಿಟ್ಟರು
ವಸುಮತಿಯನನ್ಯಾಯವುಂಟೇ ನಿನ್ನ ಮಕ್ಕಳಲಿ
ಉಸುರಲಮ್ಮದೆ ಸತ್ಯವನು ಪಾ
ಲಿಸಲು ಹೊಕ್ಕರರಣ್ಯವನು ತ
ದ್ವ್ಯಸನ ಫಲಭೋಗಿಗಳಿಗಳಲುವಿರೇಕೆ ನೀವೆಂದ ೧೧

ಅವರು ಕುಹಕೋಪಾಯದಲಿ ಕೌ
ರವರ ಕೆಡಿಸದೆ ಮಾಣರರ್ಜುನ
ಪವನಜರ ಭಾಷೆಗಳ ಮರೆದಿರೆ ಜೂಜು ಸಭೆಯೊಳಗೆ
ಅವರು ಸುಜನರು ನಿಮ್ಮವರು ಖಳ
ರವರು ಸದಮಲ ಸಾಧುಗಳು ಕೌ
ರವರಸಾಧುಗಳೆಂದು ತೋರಿತೆ ನಿಮ್ಮ ಚಿತ್ತದಲಿ ೧೨

ಗಳಹನನಿಲಜ ಗಾಢಗರ್ವದ
ಹುಳುಕನರ್ಜುನನವರ ದೇಹದ
ನೆಳಲು ಮಾದ್ರೀಸುತರು ಮಕ್ಕಳು ವಿಪುಳ ಸಾಹಸರು
ಅಳಲಬಹುದರಸಂಗೆ ಗಳಿಗೆಗೆ
ತಿಳಿವನವದಿರ ಸಂಗದಲಿ ಮನ
ಮುಳಿವನೆರಡಿಟ್ಟಿಹನು ಧರ್ಮಜನೆಂದನಾ ಶಕುನಿ ೧೩

ಅವರ ವನವಾಸದ ದಿನಂಗಳು
ನವಗೆ ಸುದಿನ ಸುಖಾನುಭವವವ
ರವಧಿ ತುಂಬಿದ ಬಳಿಕ ನೋಡಾ ಸಾಧುಗಳ ಪರಿಯ
ನಿವಗೆ ದುರ್ಯೋಧನನ ಸಾಮ್ರಾ
ಜ್ಯವ ನಿರೀಕ್ಷಿಸುವರ್ತಿಯಲಿ ಪಾಂ
ಡವರ ಹಂಬಲ ಮರೆವುದುಚಿತವು ಕರ್ಣ ಹೇಳೆಂದ ೧೪

ಬೇವು ತಾ ಪರಿಪಕ್ವವಾದರೆ
ಹಾವುಮೆಕ್ಕೆಗೆ ಸಾಕ್ಷಿ ಗಡ ಧ
ರ್ಮಾವಮಾನದ ಕವಿಗೆ ಕಾಮಾದಿಗಳ ನೆರವಿ ಗಡ
ಆ ವಿಡಂಬದ ಶಕುನಿ ಕರ್ಣರು
ಜೀವಸಖರೈ ತಮ್ಮೊಳಗೆ ದು
ರ್ಭಾವ ಭೀಕರ ಹೃದಯ ನುಡಿದನು ಕರ್ಣನರಸಂಗೆ ೧೫

ಆಹ ಶಕುನಿಯ ಮಾತಿನಲಿ ಸಂ
ದೇಹವೇ ಪಾಂಡವರು ಬಂಧು
ದ್ರೋಹಿಗಳು ತಮ್ಮವಧಿ ತುಂಬಲು ಕೇಡ ತಹರೆಂಬ
ಈ ಹದನು ತಪ್ಪುವುದೆ ನೀವತಿ
ಮೋಹದಲಿ ಬಿಡೆ ಬೀಸಿ ಬಿದ್ದರೆ
ಕಾಹುರರು ಕೌರವರ ಕೆಡಿಸುವರೆಂದನಾ ಕರ್ಣ ೧೬

ಈ ಸಿರಿಯ ಸುಗ್ಗಿಯಲಿ ನಿನ್ನವ
ರೇಸು ಹೆಚ್ಚುಗೆಯಾಗಿ ಬದುಕಿದ
ರೈಸುವನು ನೀ ನೋಡಿ ಹಿಗ್ಗದೆ ಪಾಂಡುನಂದನರು
ಗಾಸಿಯಾದರು ಗಟ್ಟ ಬೆಟ್ಟದ
ಪೈಸರದೊಳೆಂದಳಲಿ ಮರುಗುತ
ಸೂಸಿದೈ ಸಾಹಿತ್ಯ ಭಾಷೆಯನೆಂದನಾ ಕರ್ಣ ೧೭

ಸೊಗಸು ತಳಿತುದು ತರಳಮನ ತಳ
ಮಗುಚಿದಂತಾಯ್ತುವರೊಲವು ಕಾ
ಡಿಗೆಯ ಕೆಸರೊಳಗದ್ದ ನೀಲದ ಸರಿಗೆ ಸರಿಯಾಯ್ತು
ಮಗುಳುಗಂಗಳ ಬಾಷ್ಪ ಬಿಂದುವ
ನುಗುರು ಕೊನೆಯಲಿ ಮಿಡಿದು ಕರ್ಣನ
ಹೊಗಳಿದನು ಬಳಿಕೇನು ಸಿಂಗಿಯಲುಂಟೆ ಸವಿಯೆಂದ ೧೮

ಹೋಗಲಾ ಪಾಂಡವರ ಚಿಂತೆಯ
ನೀಗಿದೆನು ನೀವಿನ್ನು ನೆನವು
ದ್ಯೋಗವೇನೆನೆ ನಗುತ ನುಡಿದರು ಕರ್ಣ ಶಕುನಿಗಳು
ಈಗಳೀ ವಿಭವದ ವಿಲಾಸದ
ಭೋಗದಗ್ಗಳಿಕೆಗಳ ಭುಜ ದ
ರ್ಪಾಗಮವನವರಿದ್ದ ವನದಲಿ ತೋರಬೇಕೆಂದ ೧೯

ನಾಡೊಳಗೆ ತುರುಹಟ್ಟಿಯಲಿ ಹೊಲ
ನಾಡಿ ಹೆಚ್ಚಿದ ಗೋಕದಂಬವ
ನೋಡುವುದು ನೆವ ಕುರುಪತಿಯ ಗಾಢದ ಸಗಾಢಿಕೆಯ
ನೋಡಿ ನಸಿಯಲಿ ಪಾಂಡು ಸುತರವ
ರಾಡುಗಾಡಿನ ಹೊಲನ ಹೊರೆಯಲಿ
ಕೂಡೆ ತನುಪರಿಮಳದಲರಮನೆಯಂಗನಾ ನಿವಹ ೨೦

ವನದ ಚಿಮ್ಮಂಡೆಗಳ ಘೋರ
ಧ್ವನಿಗಳಲಿ ಕಿವಿ ಮೃಗಕುಲದ ಸೊಗ
ಡಿನಲಿ ನಾಸಿಕ ರೌದ್ರ ಭೂತಾಲೋಕನದಿ ನಯನ
ಜನಪರುರೆ ಬೆದರುವರು ನಿನ್ನರ
ಮನೆಯ ಸತಿಯರ ನೇವುರದ ನು
ಣ್ದನಿಗಳಲಿ ತನುಗಂಧದಲಿ ರೂಪುಗಳ ಸೊಗಸಿನಲಿ ೨೧

ಸಿರಿಗೆ ಸಫಲತೆಯಹುದು ನಾನಿದ
ನರಿಯೆ ನೀವವರಿದ್ದ ವಿಪಿನಾಂ
ತರಕೆ ಗಮಿಸುವುದುಚಿತವೇ ಮನಮುನಿಸು ನೆರೆ ಬಲಿದು
ಕೆರಳಿದರೆ ಕಾಳಹುದು ಭೀಮನ
ದುರುಳತನವೀ ಕೌರವೇಂದ್ರನ
ಹುರುಳು ಹುರಿಯೇರುವುದು ಮತವಲ್ಲೆಂದನಂಧ ನೃಪ ೨೨

ಹೂಣೆ ಹೊಗೆವವರೊಡನೆ ಸೆಣಸಿನ
ಸಾಣೆಯಿಕ್ಕುವು ಮಸೆವ ಕದನವ
ಕಾಣೆವೆಮ್ಮರಿಕೆಯಲಿ ಸಲುಗೆಯ ಸಾಧು ಸಾಮದಲಿ
ರಾಣಿಯರ ರಹಿಯಿಂದ ರಂಜಿಸಿ
ಜಾಣಿನಲಿ ಬಹೆವರಸ ನಿಮ್ಮಡಿ
ಯಾಣೆಯೆಂದೊಡಬಡಿಸಿದರು ನೃಪ ಕರ್ಣ ಶಕುನಿಗಳು ೨೩

ಪರಿಮಿತದಲೀ ವಾರ್ತೆ ನೆಗಳಿದು
ದರಮನೆಯಲಿದನ್ನೆದೆ ಕೇಳಿದು
ಗುರು ವಿದುರ ಗಾಂಗೇಯ ಕೃಪರಳಲಿದರು ತಮ್ಮೊಳಗೆ
ಕರೆಸಿ ನುಡಿದರು ಕರ್ಣ ಸೌಬಲ
ಕುರುಪತಿಗಳಿಗೆ ಘೋಷಯಾತ್ರಾ
ಭರವನರಿದೆವು ಹೋಹುದನುಚಿತವೆಂದರನಿಬರಿಗೆ ೨೪

ಅವಗಡೆಯನಾ ಭೀಮ ನೀವೆಂ
ಬವರು ನಿಸ್ಸೀಮರು ಚತುರ್ಬಲ
ನಿವಹ ನಿಲ್ಲದು ತುಡುಕುವುದು ತುಳಿವುದು ತಪೋವನವ
ವಿವಿಧ ಋಷಿಯರನೋಡಿಸುವರೀ
ಯುವತಿಯರು ಕೈಕಾಲು ಮೆಟ್ಟಿನ
ಬವರ ಗಂಟಿಕ್ಕುವುದು ಲೇಸಲ್ಲೆಂದನಾ ಭೀಷ್ಮ ೨೫

ಸಾರಿದೆವು ನಿಮ್ಮೊಡನೆ ಬಾರೆವು
ದೂರಲಾಗದು ನಮ್ಮನಿನಿಬರ
ಮೀರಿದೊಡೆ ರಣಭಂಗ ತಪ್ಪದು ಹೋಗಬೇಡೆನಲು
ದೂರ ತಾರೆವು ನಿವಗೆ ನಾವ್ ಕೈ
ಮೀರಿ ನಡೆಯೆವು ಕಾರ್ಯಗತಿಯಲಿ
ಜಾರಿ ಬಿದಿತೆಯ ಮಾಡಿಹೊಂದನು ಕೌರವರಾಯ ೨೬

ಆದರಲ್ಲಿ ಶುಭಾಶುಭದ ಫಲ
ಬೀದಿವರಿಸುವುದೈಸಲೇ ನಿಮ
ಗೀ ದುರಾಗ್ರಹವೇಕೆ ಕಾಂಬಿರಿ ಫಲವನಗ್ರದಲಿ
ಆದುದಾಗಲಿ ಹೋಗಿಯೆನೆ ದು
ರ್ಭೇದ ಗರ್ವಗ್ರಂಥಿ ಪುಲಕವಿ
ನೋದಶೀಲರು ಭುಜವ ಹೊಯ್ದರು ನೋಡಬಹುದೆನುತ ೨೭

ಕೇರಿಯಲಿ ಸಾರಿದರು ಕೊಟ್ಟರು
ವಾರುಕವನಬಲಾಜನಕೆ ಭಂ
ಡಾರ ಸವೆದುದು ಗಣಿಕೆಯರಿಗಾಭರಣ ದಾನದಲಿ
ಸಾರ ಪರಿಮಳ ವಸ್ತುಗಳ ಬಲು
ಭಾರಣೆಯ ಪೆಟ್ಟಿಗೆಗಳೊಟ್ಟಿತು
ತೇರುಗಳ ಮೇಲೊದಗಿತಕ್ಷೋಹಿಣಿಯ ರಾಣಿಯರು ೨೮

ಬಿಗಿದ ಬೀಯಗ ಬದ್ದರದ ಬಂ
ಡಿಗಳು ರಾಣೀವಾಸದಂದಣ
ತೆಗೆದು ಪೊರಲುವ ಕಂಚುಕಿಗಳುಗ್ಗಡದ ರಭಸದಲಿ
ಗಗನವಡಗಿತು ಪಲ್ಲವದ ಸ
ತ್ತಿಗೆಯ ಸಾಲಿನ ಝಲ್ಲರಿಯ ಜಾ
ಡಿಗಳಲಾಡುವ ಚಮರ ಸೀಗುರಿಗಳ ಪತಾಕೆಯಲಿ ೨೯

ಸವಡಿಯಾನೆಯ ಮೇಲೆ ಗಣಿಕಾ
ನಿವಹ ದಂಡಿಗೆಗಳಲಿ ಕೆಲಬರು
ಯುವತಿಯರು ಕೆಲರಶ್ವಚಯದಲಿ ರಥನಿಕಾಯದಲಿ
ಯುವತಿಮಯವೋ ಸೃಷ್ಟಿ ಗಣಿಕಾ
ಯುವತಿಯರ ನೆಲನೀದುದೋ ದಿಗು
ವಿವರ ಕರೆದುದೊ ಕಾಂತೆಯರನೆನೆ ಕವಿದುದಗಲದಲಿ ೩೦

ಅರಸ ಕೇಳೈ ಹತ್ತು ಸಾವಿರ
ಕರಿಘಟಾವಳಿಯೆಂಟು ಸಾವಿರ
ವರ ವರೂಥವು ರಾವುತರ ವಾಘೆಯಲಿ ಹಯಕೋಟಿ
ಬಿರುದಿನಗ್ಗದ ಭಟರ ಸಂಖ್ಯೆಯ
ನರಿಯೆನಿಂತಿದು ಘೋಷಯಾತ್ರೆಯ
ಪರುಠವಣೆಗೊದಗಿದ ಚತುರ್ಬಲವವನಿಪಾಲಕನ ೩೧

ನೆರೆದುದಗಣಿತ ವಂದಿಗಳು ಕವಿ
ವರರು ವಿದ್ವಾಂಸರು ವಿಧಾವಂ
ತರು ಸುನರ್ತಕ ಕಥಕ ಪರಿಹಾಸಕರು ಪಾಠಕರು
ಚರರು ಮಲ್ಲರು ಬೇಂಟೆಗಾರರು
ಪರಿಜನಾವಳಿ ಸಹಿತ ನಗರಾಂ
ತರದ ಪಯಣದ ಮೇಲೆ ಪಯಣದಲರಸನೈತಂದ ೩೨

ಅರಸ ಕೇಳಿವರತ್ತ ಪಯಣದ
ಭರದಿನೈತರೆ ಮುಂದೆ ವಾಯಸ
ವೆರಡು ತಮ್ಮೊಳು ಕದನ ಮುಖದಲಿ ವಾಮ ದೆಸೆಗಾಗಿ
ಪರಿದುವಲ್ಲಿಂ ಬಳಿಕ ಹಸುಬನ
ಸರುವು ವಾಮದಿ ಗರ್ದಭನ ಬಲ
ಕರಿಯ ಹಕ್ಕಿಯ ತಡೆಯ ಮನ್ನಿಸದೈದಿದನು ಭೂಪ ೩೩

ಅರಸ ಕೇಳೈ ದ್ವೈತವನ ಬಂ
ಧುರ ನದೀತೀರದಲಿ ವನದಲಿ
ಸರಸಿಯಲಿ ದೀರ್ಘಿಕೆಗಳಲಿ ನದದಲಿ ತಟಾಕದಲಿ
ಬೆರಸಿ ಬಿಟ್ಟುದು ಕೂಡೆ ಪಾಳೆಯ
ವರಮನೆಯ ಗುಡಿ ನೆಗಹಿದವು ವಿ
ಸ್ತರಿಸಿದವು ಮಂಡವಿಗೆ ಚಂಪೆಯ ಭದ್ರಭವನಗಳು ೩೪

ಕರೆಸಿದನು ಕೀಲಾರಿಗಳನಾ
ದರಿಸಿ ಹಟ್ಟಿಯ ತುರುಗಳೆಲ್ಲವ
ತರಿಸಿ ನೋಡಿದನಲ್ಲಿ ಹಿಂಡಿನ ಕೋಟಿ ಸಂಖ್ಯೆಗಳ
ಹರಿವ ಹಾರುವ ಪಂಟಿಸುವ ಸೈ
ವರಿವ ಮರಳುವ ಮುರಿವ ನಿಲುವೆಳೆ
ಗರುಗಳನು ನೋಡಿದನು ನಗುತ ನರೇಂದ್ರನೊಲವಿನಲಿ ೩೫

ಬೆಳೆವಿಣಿಲ ಮಿಡಿಗಲವ ಬಾಲದ
ನೆಲಕೆ ನಿಗುರುವ ಗಂಗೆದೊಗಲಿನ
ಹಲಗೆ ಬೆನ್ನಿನ ಸಿಡಿಲ ಮರಿಯೆನೆ ಮೆರೆವ ಹುಂಕೃತಿಯ
ಕೆಲವಿದಿರು ಬರಲದ್ರಿಯದ್ರಿಯ
ಹಳಚುವಂತಿರೆ ಹರಿವ ಹಾರುವ
ಸಲಗನಳ್ಳಿರಿದಾಡುತಿರ್ದವು ಹಿಂಡು ಹಿಂಡಿನಲಿ ೩೬

ತರಿಸಿ ಹೋರಿಯ ಗವಿಯ ಗೂಳಿಯ
ಬರಿಸಿದನು ಕೆಲಕೆಲವ ಕೃಷಿಕರಿ
ಗಿರಿಸಿದನು ಗೋ ಲಕ್ಷವಿತ್ತನು ವಿಪ್ರಸಂಕುಲಕೆ
ಕರೆಸಿ ಕೊಟ್ಟನು ಭಟ್ಟರಿಗೆ ಮ
ಲ್ಲರಿಗೆ ವಿಟರಿಗೆ ನಟ ವಿಧಾವಂ
ತರಿಗೆ ಬಹುವಿಧ ಬಹಳ ವಂದಿಗೆ ಮಾಗಧವ್ರಜಕೆ ೩೭

ಅಂಗಚಿತ್ರಘನಿತ್ತು ಮೊದಲ ಸ
ಮಂಗನನು ಪತಿಕರಿಸಿ ಹಿಂಡಿನ
ವಂಗಡದ ಗೋಪಾಲ ನಿಕರಕೆ ಕೊಟ್ಟನುಡುಗೊರೆಯ
ಹಿಂಗಿದವು ತುರು ಬೇಟೆಯಾಡಿ ಮೃ
ಗಂಗಳಿಗೆ ಮದ್ದರೆದು ಕಡಿವಾ
ಗಂಗಳನು ಕೊಡಿಸಿದನು ಪರಿವಾರಕೆ ವಿನೋದದಲಿ ೩೮

ಹದಿನೆಂಟನೆಯ ಸಂಧಿ

ಸೂ. ಪರಿವಿಡಿಯಲಾ ದ್ವೈತ ವನದಲಿ
ಬೆರೆಸಿ ಬಿಟ್ಟುದು ಬೀಡು ಗಂಧ
ರ್ವರಿಗೆ ಕೌರವ ಬಲದೊಡನೆ ಮಸೆದುದು ಮಹಾಸಮರ

ಕೇಳು ಜನಮೇಜಯ ಧರಿತ್ರೀ
ಪಾಲ ತುರುಪಳ್ಳಿಗಳ ನೋಡಿ ವ
ನಾಳಿ ತಪ್ಪದೆ ಬೇಂಟೆಯಾಡಿ ಸಮಸ್ತಬಲ ಸಹಿತ
ಲೀಲೆ ಮಿಗಲಾ ಪಾಂಡವರ ವನ
ವೇಲೆಯಲಿ ನಿಸ್ಸಾಳ ರಭಸದ
ಸೂಳ ಸಂಕೇತದಲಿ ನೃಪ ಬಿಡಿಸಿದನು ಪಾಳಯವ ೧

ಲಾಯ ನೀಡಿತು ಮುಂದೆ ರಾವುತ
ಪಾಯಕರಿಗೆಡವಂಕ ಮಂತ್ರಿ ಪ
ಸಾಯತರು ಕರ್ಣಾದಿಗಳಿಗೆಡೆಯಾಯ್ತು ಬಲವಂಕ
ರಾಯನರಮನೆ ಮೌಕ್ತಿಕದ ಕಳ
ಶಾಯತದ ಬೆಳಗಿನಲಿ ಪಾಂಡವ
ರಾಯನೆಲೆವನೆಗಳನು ನಗುತಿದ್ದುದು ನವಾಯಿಯಲಿ ೨

ಅರಸ ಕೇಳೈ ಕೌರವೇಶ್ವರ
ನರಸಿಯರ ಲೀಲೆಯಲಿ ಶತ ಸಾ
ವಿರ ಸಖೀಜನ ಸಹಿತ ಹೊರವಂಟರು ವನಾಂತರಕೆ
ಸರಸಿಜದ ನಿಜಗಂಧದಲಿ ತನು
ಪರಿಮಳವ ತಕ್ಕೈಸಿ ವನದಲಿ
ತರಳೆಯರು ತುಂಬಿದರು ಮರಿದುಂಬಿಗಳ ಡೊಂಬಿನಲಿ ೩

ಕೆಲರು ಹೊಂದಾವರೆಯ ಹಂತಿಯ
ಕೊಳನ ಹೊಕ್ಕರು ಬಿಲ್ವಫಲಗಳ
ನಿಲುಕಿ ಕೊಯಿದರು ಕೊಡಹಿ ಮೊಲೆಗಳ ಮೇಲುದಿನ ನಿರಿಯ
ಕೆಲರು ಹೂಗೊಂಚಲಿನ ತುಂಬಿಯ
ಬಳಗವನು ಬೆಂಕೊಂಡರುಲಿವರೆ
ಗಿಳಿಗೆ ಹಾರದ ಬಲೆಗಳನು ಹಾಯ್ಕಿದರು ಕೊಂಬಿನಲಿ ೪

ಪಾರಿವದುಪಾಧ್ಯರನು ನಮಿಸುತೆ
ವಾರಸಾರಿಯರಾಸನದಲಿ ಚ
ಕೋರಗಳ ಚಾಳೈಸಿದರು ಕೆಲರಂಗ ಪರಿಮಳಕೆ
ಸಾರಿದರೆ ಮರಿದುಂಬಿಗಳ ಸುಖ
ಪಾರಣೆಯ ಬೆಸಗೊಳುತ ನಗುತ ವಿ
ಕಾರಿಗಳು ಪೇದ್ಕೈಸಿದರು ನೃಪ ಮುನಿ ನಿಜಾಶ್ರಮವ ೫

ನೇವುರದ ದನಿ ದಟ್ಟೈಸಿತು ವೇ
ದಾವಳಿಯ ನಿರ್ಘೋಷವನು ನಾ
ನಾ ವಿಭೂಷಣ ಕಾಂತಿ ಕೆಣಕಿತು ಮುನಿ ಸಮಾಧಿಗಳ
ಆ ವಧೂಜನದಂಗ ಗಂಧ
ಪ್ರಾವರಣ ಹುತ ಚರು ಪುರೋಡಾ
ಶಾವಳಿಯ ಸೌರಭವ ಮುಸುಕಿತು ವನದ ವಳಯದಲಿ ೬

ಹೊಕ್ಕರಿವರಾಶ್ರಮವ ತುರುಗಿದ
ತಕ್ಕರಂತಃಕರಣ ತುರಗಕೆ
ದುಕ್ಕುಡಿಯನಿಕ್ಕಿದರು ತಿರುಹಿದರೆರಡು ವಾಘೆಯಲಿ
ಸಿಕ್ಕಿದವು ಧಾಳಿಯಲಿ ಧೈರ್ಯದ
ದಕ್ಕಡರ ಮನ ಹರಹಿನೊಳಹಾ
ಯಿಕ್ಕಿದರು ಕಡೆಗಣ್ಣ ಬಲೆಗಳ ಮುನಿಮೃಗಾವಳಿಗೆ ೭

ಸ್ರುಕ್ ಸ್ರುವವ ಮುಟ್ಟಿದರು ಧೌತಾಂ
ಶುಕದೊಳಗೆ ತಂಬುಲವ ಕಟ್ಟಿದ
ರಕಟುಪಾಧ್ಯರ ಮೋರೆಯನು ತೀಡಿಸುತ ಬೆರಲಿನಲಿ
ಚಕಿತ ಧೃತಿಯರು ದೀಕ್ಷಿತರ ಚಂ
ಡಿಕೆಗಳನು ತುಡುಕಿದರು ಮುನಿ ವಟು
ನಿಕರ ಶಿರದಲಿ ಕುಣಿಸಿದರು ಕುಂಚಿತ ಕರಾಂಗುಲಿಯ ೮

ರಾಯರೆಂಬವರಿಲ್ಲಲಾ ಸ್ವಾ
ಧ್ಯಾಯ ಕೆಟ್ಟುದು ಮುಟ್ಟಿದರುಪಾ
ಧ್ಯಾಯರನು ಶೂದ್ರಿಯರು ಸೆಳೆದರು ಮೌಂಜಿ ಮೇಖಲೆಯ
ಹಾಯಿದರು ಯಜ್ಞೋಪವೀತಕೆ
ಬಾಯಲೆಂಜಲಗಿಡಿಯ ಬರುವರ
ಲಾಯೆಸುತ ಬಿಟ್ಟೋಡಿದರು ಸುಬ್ರಹ್ಮಚಾರಿಗಳು ೯

ಕೆದರಿದರು ಗಡ್ಡವನುಪಾಧ್ಯರು
ಬೆದರಿ ನಿಂದರಿದೇನಿರವು ಮಾ
ಡಿದ ವಿಟಾಳವ ಹೇಳುಪೆವು ಕುಂತೀ ಕುಮಾರರಿಗೆ
ಇದು ಮಹಾಋಷಿ ಸೇವಿತಾಶ್ರಮ
ವಿದರ ಶಿಷ್ಟಾಚಾರವನು ಕೆಡಿ
ಸಿದವರೇ ಕ್ಷಯವಹರು ಹರ ಹರಯೆಂದರಾ ದ್ವಿಜರು ೧೦

ಹೇಳಿದೊಡೆ ಕುಂತೀ ಕುಮಾರರು
ಕೇಳಿ ಮಾಡುವುದಾವುದೋ ವನ
ಪಾಲಕರು ತಾವಿಂದು ಪೃಥ್ವೀಪಾಲನೆಮ್ಮೊಡೆಯ
ಹೇಳಿ ಬಳಿಕರ್ಜುನನ ಭೀಮನ
ಧಾಳಿಯನು ತಹುದೆನುತಲತಿ ಘಾ
ತಾಳಿಯರು ಮುನಿಜನವ ಬೈದರು ಬಹು ವಿಕಾರದಲಿ ೧೧

ಶಾಂತರುರೆ ವಿಜಿತೇಂದ್ರಿಯರು ವೇ
ದಾಂತ ನಿಷ್ಠರು ಸುವ್ರತಿಗಳ
ಶ್ರಾಂತ ವೇದಾಧ್ಯಯನ ಯಾಜ್ಞಿಕ ಕರ್ಮ ಕೋವಿದರು
ಸಂತನಾನುಷ್ಠಾನಪರರನ
ದೆಂತು ನೀವಾಕ್ರಮಿಸುವಿರಿ ವಿ
ಭ್ರಾಂತರೌ ನೀವೆನುತ ಜರೆದರು ಕಾಮಿನೀಜನವ ೧೨

ಒದೆದು ಪದದಲಿ ಕೆಂದಳಿರ ತೋ
ರಿದೆವಶೋಕೆಗೆ ಮದ್ಯ ಗಂಡೂ
ಷದಲಿ ಬಕುಳದ ಮರನ ಪಲ್ಲವಿಸಿದೆವು ಕುರುವಕಕೆ
ತುದಿಮೊಲೆಯ ಸೋಂಕಿನಲಿ ಹೂದೋ
ರಿದೆವು ಕಣ್ಣೋರೆಯಲಿ ತಿಲಕವ
ಕದುಕಿದೆವು ನೀವಾವ ಘನ ಪದವೆಂದರಬಲೆಯರು ೧೩

ಬಲುಮೊಲೆಯ ಸೋಂಕಿನಲಿ ಶಾಂತರ
ತಲೆಕೆಳಗ ಮಾಡುವೆವು ಕಡೆಗ
ಣ್ಣಲಗಿನಲಿ ಕೊಯ್ದೆತ್ತುವೆವು ವಿಜಿತೇಂದ್ರಿಯರ ಮನವ
ಎಳೆನಗೆಗಳಲಿ ವೇದಪಾಠರ
ಕಲಕಿ ಮಿಗೆ ವೇದಾಂತನಿಷ್ಠರ
ಹೊಳಸಿ ದುವ್ವಾಳಿಸುವೆವೆಮಗಿದಿರಾರು ಲೋಕದಲಿ ೧೪

ಎನುತ ಕವಿದುದು ಮತ್ತೆ ಕಾಂತಾ
ಜನ ಸುಯೋಧನನರಮನೆಯ ಸೊಂ
ಪಿನ ಸಖೀ ನಿಕುರುಂಬ ತುಂಬಿತು ವರ ತಪೋವನವ
ಮನಸಿಜನ ದಳ ನೂಕಿತೇಳೇ
ಳೆನುತ ಚೆಲ್ಲಿತು ಮುನಿನಿಕರ ನೃಪ
ವನಿತೆಯಿದಿರಲಿ ಸುಳಿದರಿವದಿರು ಮಂದಿ ಸಂದಣಿಸಿ ೧೫

ಈಕೆ ಪಾಂಡವಸತಿ ಕಣಾ ತೆಗೆ
ಯೀಕೆಯತಿ ದಾರಿದ್ರ ಮಾನುಷೆ
ಯೀಕೆಯಲ್ಲೊಳಗಿಹಳು ರಾಣೀವಾಸವೆಂಬರಲೆ
ಈಕೆಯುಹುದಲ್ಲಿದಕೆ ಪಣವೇ
ನೀಕೆ ಬಣಗಕಟೆಂದು ಕಾಂತಾ
ನೀಕ ತಮ್ಮೊಳು ನುಡಿವುತಿದ್ದುದು ತೋರಿ ಬೆರಲಿನಲಿ ೧೬

ಕುಣಿವರಂದುಗೆ ಕಾಲ ಝಣ ಝಣ
ಝಣ ಝಣತ್ಕೃತಿ ರಭಸ ಮಿಗೆ ಕಂ
ಕಣದ ದನಿದೋರುವರು ನುಡಿ ನುಡಿಸಿಕ್ಕಿ ಕಂಥದಲಿ
ಮಣಿಮಯದ ಕುಂಡಲವನಲುಗಿಸಿ
ಯೆಣಿಸುವಂತಿರೆ ಕೊರಳ ಹಾರದ
ಮಣಿಗಳನು ಮುತ್ತುಗಳ ಮೆರೆವರು ಮುರಿದ ಮೌಳಿಯಲಿ ೧೭

ಬಳಿಯಲೈದಿತು ಮುನಿಗಳಿವರುಪ
ಟಳವನರಸಂಗರುಹಿದರು ವೆ
ಗ್ಗಳಿಸಿ ಭೀಮಂಗೆಂದರರ್ಜುನ ಯಮಳರಿದಿರಿನಲಿ
ಉಳಿದರೆಮಗೀ ವನ ವಿಟಾಳ
ಪ್ರಳಯವಾದುದು ಕಾನನಾಂತರ
ನಿಳಯದಲಿ ನಿಲಿಸೆಮ್ಮನೆಂದುದು ಸಕಲ ಮುನಿನಿಕರ ೧೮

ಅರಸಲಾ ಕುರುರಾಯನಾತನ
ಬರವು ತುರುಪಟ್ಟಿಗಳ ಗೋ ವಿ
ಸ್ತರಣೆಗೋಸುಗವೈಸೆ ಪಾಳೆಯ ಸಾರ್ವಭೌಮನದು
ಪರಿಸರದಲಿದ್ದುದು ವಿನೋದಕೆ
ತರುಣಿಯರು ಬರಲೇಕೆ ನೀವ
ಬ್ಬರಿಸುವಿರಿ ನಮ್ಮವರಲಾಯೆಂದನು ಮಹೀಪಾಲ ೧೯

ಔಡುಗಚ್ಚಿ ದನಂಘ್ರಿಯಲಿ ನೆಲ
ಬೀಡು ಬಿಡಲೊದೆದನು ಕರಾಂಗುಲಿ
ಗೂಡಿ ಮುರಿದೌಕಿದನು ಖತಿಯಲಿ ನಿಜ ಗದಾಯುಧವ
ನೋಡಿದನು ಕುರುರಾಯನಲಿ ಹೊ
ಯ್ದಾಡಿ ಬರಬೇಕೆಂಬ ಭೀಮನ
ಮೋಡಿಯನು ನೃಪನರಿದು ಸಂತೈಸಿದನು ಸಾಮದಲಿ ೨೦

ಕರೆಸಿದನು ನೃಪ ವಾರಿ ಕೇಳಿಗೆ
ವರ ವಧೂವರ್ಗವನು ಕೇಳಿದು
ತಿರುಗಿತಂಗಜ ದಟ್ಟು ಝಣ ಝಣ ರವದ ರಭಸದಲಿ
ಸರಿದಿಳಿವ ನಿರಿಯೊಂದು ಕೈಯಲಿ
ಸುರಿವರಳ ಮುಡಿಯೊಂದು ಕೈಯಲಿ
ಭರದಿ ಗಮನಸ್ವೇದಜಲ ಮಘಮಘಿಸೆ ದೆಸೆದೆಸೆಗೆ ೨೧

ಬಲುಮೊಲೆಗಳಳ್ಳಿರಿಯಲೇಕಾ
ವಳಿಗಳನು ಕೆಲಕೊತ್ತಿ ಮೇಲುದ
ಕಳಚಿ ನಡುಗಿಸಿ ನಡುವನಂಜಿಸಿ ಜಘನ ಮಂಡಲವ
ಅಳಕ ನಿಕರವ ಕುಣಿಸಿ ಮಣಿ ಕುಂ
ಡಲವಲುಗಿಸಿ ಹಣೆಯ ಮುತ್ತಿನ
ತಿಲಕವನು ತನಿಗೆದರಿ ನಡೆದುದು ಕೂಡೆ ಸತಿ ನಿವಹ ೨೨

ತಾರಕಿಗಳುಳಿದಂಬರದ ವಿ
ಸ್ತಾರವೋ ಗತ ಹಂಸಕುಲ ಕಾ
ಸಾರವೋ ನಿರ್ಮಲ ತಪೋವನವೆನಲು ರಂಜಿಸಿತು
ನಾರಿಯರ ದಳ ತಿರುಗಿದರೆ ತನಿ
ಸೌರಭದ ದಳ ತೆಗೆಯದಾ ಕಾಂ
ತಾರದೊಳಗೇನೆಂಬೆನಾ ಸೌಗಂಧ ಬಂಧುರವ ೨೩

ಅರಸ ಕೇಳೈ ವಾರಿ ಕೇಳಿಗೆ
ಕುರುಪತಿಯ ನೇಮದಲಿ ಶತ ಸಾ
ವಿರ ಸರೋಜಾನನೆಯರೈದಿತು ವನ ವನಂಗಳಲಿ
ಪರಿಮಳದ ಪಸರಣದ ಪದ್ಮಾ
ಕರ ಸಹಸ್ರದ ಸಾಲ ಸುಮನೋ
ಹರ ಮಹೋದ್ಯಾನವನು ಕಂಡೈತಂದರಬಲೆಯರು ೨೪

ರಾಯಕುವರರು ಸಚಿವ ಮಂತ್ರಿ ಪ
ಸಾಯತರ ಮಕ್ಕಳು ಚಮೂಪರ
ನಾಯಕರ ನಂದನರು ವಿಟರು ವಿನೋದಿಗಳು ಪುರದ
ಆಯತಾಕ್ಷಿಯರೊಡನೆ ರಾವುತ
ಪಾಯಕರ ಸುತರಾಳಿ ಮೇಳ ನ
ವಾಯಿಗಳ ನಾಗರಿಕರೈದಿತು ಕೋಟಿ ಸಂಖ್ಯೆಯಲಿ ೨೫

ತವಗ ತಳಿ ಮುಳುವೇಲಿ ಬಾಗಿಲ
ಜವಳಿಗದ ಬೀಯುಗದಲಿದ್ದುದು
ದಿವಿಜವನವುದ್ದಂಡತರ ಪರಿಮಳದ ಪೂರದಲಿ
ಯುವತಿಯರ ದಳ ನೂಕಿತುದಕೋ
ತ್ಸವ ವೃಥಾಕೇಳಿಯಲಿ ಕನಕೋ
ದ್ಭವ ಕವಾಟನೊದೆದು ಕರೆದರು ಕಾಹಿನವರುಗಳ ೨೬

ಅರಿವರು ಕರೆವವರೆನುತ ಸುರ
ವೀರರೌಕಿತು ಬಾಗಿಲಲಿ ನೀ
ವಾರೆನಲು ತೆಗೆ ಕದವಸರಿಯಾ ರಾಯನರಮನೆಯ
ವಾರನಾರಿಯರವನಿಪತಿಯ ಕು
ಮಾರರಿದೆ ಬೇಹವರು ಸರಸಿಯ
ವಾರಿಕೇಳಿಗೆ ಬಂದೆವೆಂದರು ಗಜರಿ ಗರ್ಜಿಸುತ ೨೭

ಹೊಗಬಹುದೆ ಗಂಧರ್ವ ರಾಯನ
ಮಗನ ವನವಿದು ನೋಡಿದೊಡೆ ದೃಗು
ಯುಗಳದೆವೆ ಸೀವುದು ಕಣಾ ಫಡ ಹೋಗಿ ಹೋಗಿಯೆನೆ
ತೆಗೆ ವಿಕಾರವೆ ನಮ್ಮೊಡನೆ ತೆಗೆ
ತೆಗೆ ಕದವ ಗಂಧರ್ವನಾರಿಗೆ
ಮುಗನದಾವವನೆನುತ ಹೊಕ್ಕರು ತಳಿಯ ಮುರಿದೊದೆದು ೨೮

ಒರಲಿದವು ಕಹಳೆಗಳು ಕಾಹಿನ
ಸುರಭಟರು ನೆರೆದಸಿ ಮುಸುಂಡಿಯ
ಪರಶು ಮುದ್ಗರ ಚಾಪ ಮಾರ್ಗಣ ಸಬಳ ಸೂನಗೆಯ
ಹರಿಗೆ ಖಡ್ಗದಲರಿಭಟರ ಚ
ಪ್ಪರಿಸಿದರು ಗಂಧರ್ವ ಭಟರಿಗೆ
ಕುರುಪತಿಯ ಸುಭಟರಿಗೆ ತೊಡಕಿತು ತೋಟಿ ತೋಪಿನಲಿ ೨೯

ಚೆಲ್ಲಿದರು ಚಪಳೆಯರು ಮುನಿಜನ
ವೆಲ್ಲ ಪಾಂಡವರಾಶ್ರಮದ ಮೊದ
ಲಲ್ಲಿ ಮೊನೆಗಣೆ ಮೊಳೆದು ಮುರಿದವು ಮೊನೆಯ ಮುಂಬಿಗರ
ಚೆಲ್ಲೆಗಂಗಳ ಯುವತಿಯರ ಸಾ
ನಲ್ಲಿ ಕಾಣೆನು ಕಾಮುಕರು ನಿಂ
ದಲ್ಲಿ ನಿಲ್ಲದೆ ಹರಿದರವನೀಪತಿಯ ಪಾಳಯಕೆ ೩೦

ಬರಿಯ ಮಕ್ಕಳ ತಂಡವೇ ಹೊ
ಕ್ಕಿರಿದುದವದಿರನುರುಬಿ ದಿವಿಜರು
ಜರೆದು ನೂಕಿತು ತೋಪಿನೊಳ ಬಿದ್ದವರ ಹೊರವಡಿಸಿ
ಮುರಿದು ತಳಿಗಳ ಬಲಿದು ಬಾಗಿಲ
ಹೊರಗೆ ನಿಂದರು ವಾರಿ ಕೇಳಿಯ
ಮರೆದು ಶೋಣಿತ ವಾರಿ ಕೇಳಿಗೆ ಬಸ್ಸಿ ನೀವೆನುತ ೩೧

ನೃಪಸುತರ ಪಡಿಬಲಕೆ ಬಂದಿತು
ವಿಪುಳ ಬಲ ಹಲ್ಲಣಿಸಿ ಹೊಯ್ ಹೊಯ್
ಅಪಸದರ ಗಂಧರ್ವ ಸುಭಟರನೆನುತ ಸೂಟಿಯಲಿ
ಕುಪಿತರರೆಯಟ್ಟಿದರು ತೋಪಿನ
ಕಪಿಗಳಾವೆಡೆ ಕಾಣಬಹುದೆನು
ತುಮುಲಿತರೊಳ ಸರಿಯೆ ಹೊಗಿಸಿದರವರನಾ ವನವ ೩೨

ಬಂದ ಬಲ ಪೇರಾಳ ತೆಗೆ ತೆಗೆ
ಯೆಂದು ತೋಪಿನ ಕಡೆಗೆ ಹಾಯಿದು
ನಿಂದು ನೆರಹಿದರಸಟೆ ಗಂಧರ್ವರು ಭಟವ್ರಜವ
ಬಂದುದದು ನಡುವನಕೆ ಕೌರವ
ವೃಂದವನು ಕವಿದರು ವಿಶೋಕಕೆ
ಬಂದರೆ [illegible]ರಾಜ ಸಲಿಲಕ್ರೀಡೆಯುದೆಯೆನುತ ೩೩

ಮುರಿಯೆನುತ ಗಂಧರ್ವಬಲ ಮು
ಕ್ಕುರಿಕಿ ಕೌರವ ಬಲವ ತತ್ತರಿ
ದರಿದು ತರಹರವಿಲ್ಲೆನಿಸಿ ಹೊಗಿಸಿದರು ಪಾಳಯವ
ಹೊರಗುಡಿಯ ಹೊರಪಾಳಯದ ಭಟ
ರರುಹಿದರು ಕುರುಪತಿಗೆ ಖತಿಯುಲಿ
ಜರೆದು ಜೋಡಿಸಿ ಬಿಟ್ಟನಕ್ಷೋಹಿಣಿಯ ನಾಯಕರ ೩೪

ಹಲ್ಲಣಿಸಿತೀ ಚಾತುರಂಗವ
ದೆಲ್ಲ ಕವಿದುದು ಹೊಕ್ಕು ದಿವಿಜರ
ಚೆಲ್ಲ ಬಡಿದರು ಚಾಚಿದರು ತೋಪಿನ ಕವಾಟದಲಿ
ನಿಲ್ಲದೌಕಿದರಂತಕನ ಪುರ
ದೆಲ್ಲೆಯಲಿ ಹೆಕ್ಕಳದ ಖಡುಗದ
ಫಲ್ಲಣೆಯ ಖಣಿ ಖಣಿಲ ಗಾಢಿಕೆ ಕಂಟಿಸಿತು ನಭವ ೩೫

ಬಲದ ಪದ ಘಟ್ಟಣೆಗೆ ಹೆಮ್ಮರ
ನುಲಿದು ಬಿದ್ದವು ಸಾಲ ಪೂಗಾ
ವಳಿ ಕಪಿತ್ಥ ಲವಂಗ ತುಂಬುರ ನಿಂಬ ದಾಳಿಂಬ
ಫಲ ಪಲಾಶರ ಸಾಲ ಶಮಿ ಗು
ಗ್ಗುಳ ಮಧೂಕಾಶೋಕ ಬಿಲ್ವಾ
ಮಲಕ ಜಂಬೀರಾದಿಗಳು ನುಗ್ಗಾಯ್ತು ನಿಮಿಷದಲಿ ೩೬

ಕದಡಿದವು ಸರಸಿಗಳು ಕೆಡೆದವು
ಕದಳಿಗಳು ಗೊನೆಸಹಿತ ಮುಂಡಿಗೆ
ಮುದುಡಿ ನೆಲಕೊರಗಿದವು ಮಿರುಗುವ ನಾಗವಲ್ಲಿಗಳು
ತುದಿಗೊನೆಯ ಚೆಂದೆಂಗು ಖರ್ಜೂ
ರದಲಿ ಕಾಣೆನು ಹುರುಳ ನಾರಂ
ಗದ ವಿರಾಮವನೇನನೆಂಬೆನು ನಿಮಿಷ ಮಾತ್ರದಲಿ ೩೭

ತೋಟ ಹುಡಿ ಹುಡಿಯಾಯ್ತು ಮುರಿದುದು
ತೋಟಿಯುಲಿ ನಮ್ಮವರು ಹಗೆಗಳ
ಗಾಟವವರಾಚೆಯುಲಿ ದುರ್ಬಲ ನಮ್ಮದೀಚೆಯುಲಿ
ಆಟವಿಕ ದಳ ಹೊಯ್ದು ಮಿಂಡರ
ಮೀಟನೆತ್ತಿದರವರು ಕಾಹಿನ
ಕೋಟಲೆಗೆ ನಾವೊಲ್ಲೆವೆಂದರು ಚಿತ್ರಸೇನಂಗೆ ೩೮

ಅವರು ಮರ್ತ್ಯರು ನಮ್ಮದಕಟಾ
ದಿವಿಜರೀ ವಿಧಿಯಾದುದೇ ಕವಿ
ಕವಿಯೆನುತ ಬೇಹವರಿಗಿತ್ತನು ರಣಕೆ ವೀಳೆಯವ
ಗವಿಯ ಗರುವರು ಗಾಢಿಸಿತು ಮಾ
ನವರ ಮುರುಕಕೆ ಮುರಿದುದೀ ಸುರ
ನಿವಹ ಸುಡಲಾಹವವನೆನುತ್ತೈದಿದರು ಸೂಟಿಯಲಿ ೩೯

ಆತುದಿದು ತೋಪಿನಲಿ ಗಂಧ
ರ್ವಾತಿರೇಕವ ಸೈರಿಸುತ ಪದ
ಘಾತಧೂಳೀಪಟಲ ಪರಿಚುಂಬಿಸಿದುದಂಬರವ
ಭೀತಿ ಬಿಟ್ಟುದೆ ಮನುಜರಿಗೆ ನ
ಮ್ಮಾತಗಳ ಕೂಡಹುದಲ್ಲೈ ಕಾ
ಲಾತುದೇ ಕಲಿತನವೆನುತ ಕೈಕೊಂಡರವಗಡಿಸಿ ೪೦

ಆರು ನಿಲುವರು ದೇವಲೋಕವ
ವೀರರಲ್ಲಾ ವಿಗಡರೆಸುಗೆಯ
ಭೂರಿ ಬಾಣದ ಹಿಂಡು ತರಿದವು ಹೊಗುವ ಗಂಡಿಗರ
ವಾರುವನ ಮುಖದಿರುಹಿದವು ಮದ
ವಾರಣಂಗಳ ಕೊಡಹಿದವು ಹೊಂ
ದೇರು ಮುಗ್ಗಿದವೊಗ್ಗು ಮುರಿದುದು ಮಿಗುವ ಕಾಲಾಳ ೪೧

ಮುರಿದುದಿದು ಗಂಧರ್ವ ಬಲ ಮಿಂ
ಕ್ಕುರುಬಿಕೊಂಡೇ ಬಂದುದಗ್ಗದ
ಗುರುವರಳಿದುದು ಬರಿಯ ದುರುಯಶವುಳಿದುದರಸಂಗೆ
ಕರಿತುರಗ ರಥ ಪಾಯದಳ ಹೆಣ
ದೊರಳಿಗಟ್ಟಿತು ಪಾಳಯದ ಗೋ
ಪುರದ ಹೊರ ಬಾಹೆಯಲಿ ನಿಂದುದು ಬಳಕೆ ಬೇಹವರು ೪೨

ಮುರಿದು ಬರುತಿದೆ ಜೀಯ ನಾಯಕ
ರುರಿವವರ ಬಲುಗಾಯದಲಿ ಕು
ಕ್ಕುರಿಸಿದರು ಗಂಧರ್ವರಿದೆ ಕಡೆವನದ ಕಾಹಿನಲಿ
ಮರಳಿ ಪಾಳಯ ಬಿಡಲಿ ಮೇಣ್ ಹಗೆ
ಯಿರಿತಕಂಗೈಸುವರ ಬಿಡು ಕೈ
ಮರೆಯಬೇಡೆನೆ ಬೆರಳ ಮೂಗಿನಲರಸ ಬೆರಗಾದ ೪೩

ಹತ್ತೊಂಬತ್ತನೆಯ ಸಂಧಿ

ಸೂ. ರಾಯ ದಳವನು ಮುರಿದು ಕೌರವ
ರಾಯನನುಜರು ಸಹಿತ ಗಗನಕೆ
ಹಾಯಿದನು ಗಂಧರ್ವಪತಿ ಸುರಪತಿಯ ನೇಮದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ವನಪಾಲಕರ ಜಗಳದೊ
ಳಾಳು ನೊಂದುದು ಧರೆಗೆ ಬಿದ್ದುದು ತೋಟಿ ತೋಹಿನಲಿ
ಆಲಿಗಳ ಕೀಳ್ನೋಟದೊಲಹಿನ
ಮೌಳಿಯುಬ್ಬೆಯ ಸೂಲ ದುಗುಡದ
ಜಾಳಿಗೆಯ ಜಡಮನದಲಿದ್ದನು ಕೌರವರರಾಯ ೧

ಜೀಯ ದುಗುಡವಿದೇಕೆ ದಿವಿಜರ
ರಾಯ ಶಿಖಿ ಯಮ ನಿರುತಿ ಜಲಧಿಪ
ವಾಯು ಧನದ ಶಿವಾದಿಗಳ ಸಾಹಸಕೆ ಮೂವಡಿಯ
ರಾಯ ಭಟರಿದೆ ನೇಮಿಸಾ ಸುರ
ರಾಯನೂರಿನ ಹಾಡುಗರ ಹುಲು
ನಾಯಕರಿಗಿನಿತೇಕೆ ಖತಿ ಬೆಸಸೆಂದನಾ ಕರ್ಣ ೨

ನೇಮವಾಯಿತು ಸುಭಟರೊಳಗೆ ಸ
ನಾಮರೆದ್ದರು ಕರ್ಣ ಸೌಬಲ
ಭೂಮಿಪತಿಯನುಜಾತ ಬಾಹ್ಲಿಕ ಶಲ್ಯನಂದನರು
ಸೋಮದತ್ತನ ಮಗ ಕಳಿಂಗ ಸು
ಧಾಮ ಚಿತ್ರ ಮಹಾರಥಾದಿ ಮ
ಹಾ ಮಹಿಮರನುವಾಯ್ತು ಗಜ ಹಯ ರಥ ನಿಕಾಯದಲಿ ೩

ನೂಕಿದರು ಮುಂಗುಡಿಯವರು ಬನ
ದಾಕೆಯಲಿ ಹೊಯ್ದರು ವಿರೋಧಿ ದಿ
ವೌಕಸರನಿಕ್ಕಿದರು ಸಿಕ್ಕಿದರುರವ ಸುಳಿದಲಿ
ಆಕೆವಾಳರು ಕರ್ಣ ಶಕುನಿಗ
ಳೇಕೆ ನಿಲುವರು ಬಿರಿದು ಪಾಡಿನ
ನೇಕ ಭಟರೊಳಬಿದ್ದು ತಿವಿದರು ಬೆರಸಿ ಪರಬಲವ ೪

ಮತ್ತೆ ಮುರಿದುದು ದೇವಬಲ ಬೆಂ
ಬತ್ತಿ ತಿವಿದರು ಕೌರವನ ಭಟ
ರೆತ್ತಿ ಹಾಯ್ಕಿದರದಟ ಗಂಧರ್ವರ ಭಟವ್ರಜವ
ತೆತ್ತಿಸಿದ ಶರದೇರ ಸುರಿಗರು
ಳೊತ್ತುಗೈಗಳ ತಾಳಿಗೆಯ ತಲೆ
ಹೊತ್ತು ರಕ್ತದ ರಹಿಯಲೋಡಿತು ಸೇನೆ ಸುರಪುರಕೆ ೫

ಹೊಯ್ಯಲಾದುದು ಚಿತ್ರಸೇನನ
ಬಯ್ಯಲೇತಕೆ ಬೇರೆ ಗಾಯದ
ಮೈಯ ಬಿಸುಟಾಯುಧದ ಬೆನ್ನಲಿ ಬಿಟ್ಟ ಮಂಡೆಗಳ
ಸುಯ್ಯ ಬಹಳದ ಭಟರು ತೊದಳಿಸು
ತೊಯ್ಯನೆಂದರು ಜೀಯ ಕರ್ಣನ
ಕೈಯಲಮರರ ಜೀವವದೆ ಜಾರುವುದು ಹಿತ ನಿಮಗೆ ೬

ಕಳವಳಿಸದಿರಿ ಧನುವ ತಾ ಹೆ
ಬ್ಬುಲವ ಕರೆ ಕರೆ ಹುಲು ಮನುಷ್ಯರ
ಬಲುಹು ಗಡ ಬಯಲಾಯ್ತು ಗಡ ಗಂಧರ್ವರಾಟೋಪ
ನೆಲನೊಳುಕ್ಕರೆ ಶೋಣಿತಕೆ ರಾ
ಟಳವ ಹಿಡಿ ಬರಹೇಳು ಶಾಕಿನಿ
ಕುಲವ ಡಾಕಿನಿಯರನು ನೆತ್ತರುಗುಡುಹಿ ಕೈಸೆಯರ ೭

ಏನ ಹೇಳುವೆನರಸ ದಿವಿಜರ
ಸೇನೆಯಲ್ಲಾ ಛತ್ರ ಚಮರ ವಿ
ತಾನದಲಿ ನಭವಿಲ್ಲ ನೆಗಹಿದ ಸಬಳ ಶಲ್ಲೆಹಕೆ
ಮೈನುಸುಳ ಕಾಣೆನು ಸಮೀರನ
ಭಾನುಕಿರಣದ ಸುಳಿವನೀಶ್ವರ
ತಾನೆ ಬಲ್ಲನು ಶಿವ ಶಿವೆನೆ ಜೋಡಿಸಿತು ನಿಮಿಷದಲಿ ೮

ತಿನ್ನಡಗ ಕೊಯ್ನೆಣನ ಮನುಜರ
ಬೆನ್ನಲುಗಿ ತನಿಗರುಳನಕಟಾ
ಕುನ್ನಿಗಳಿರುದ್ಯಾನ ವನವನು ಕೆಡಿಸಿ ಕಳೆದಿರಲ
ಮುನ್ನ ಮುರಿದವರಾರೆನುತ ವಿ
ತ್ತನ್ನರನು ತೊಲಗಿಸುತ ಸುರಪನ
ಮನ್ನಣೆಯ ಗಂಧರ್ವಬಲ ಬೆರಸಿದುದು ಪರಬಲವ ೯

ಪೊಯ್ಲು ರೊಳಬಿದ್ದವರ ಮುಂದಲೆ
ಹಾಯ್ಲು ತಿವಿದರು ಮುರಿದ ಮೂಳೆಯು
ಪೊಯ್ಲು ಕರುಳಿನ ಮಿದುಳ ಜೋರಿನ ಬಸಿವ ಶೋಣಿತದ
ಕಯ್ಲುಗಳ ಖಣಿ ಖಟಿಲ ಹೊಯ್ಲಿನ
ಬಾಯ್ಲು ಣಿಯೆ ಬೈಗುಳಿನಲುಭಯದ
ಕಯ್ಲುಗಾರರು ನೀಗಿದರು ನಿಜಪತಿಯ ಹಣ ರುಣವ ೧೦

ಬಿಟ್ಟ ಸೂಟಿಯು ಕಂದುರೆಗಾರರ
ನಿಟ್ಟೆಡೆಯಲೌಕಿದ ಮದೇಭದ
ಘಟ್ಟುಗಳನುಬ್ಬೆದ್ದು ಹರಿಸುವ ರಥದ ವಾಜಿಗಳ
ಚಿಟ್ಟ ನಾರಾಚದ ವಿಘಾತದೊ
ಳಿಟ್ಟ ಸೆಲ್ಲೆಹ ಸಬಳ ಬಿಟ್ಟೇ
ರಿಟ್ಟಿಗಳ ಮಳೆ ನಾದಿದವು ಕಾದಿದರು ಚೂಣಿಯಲಿ ೧೧

ಮುರಿದ ಚೂಣಿಯು ಭಟರು ತಂಢರು
ಚಿರಿಸಿಸರೆನೆಲೆಗಿದು ನಿಹಾರದೊ
ಳಿರಿದು ನೆರೆ ಸೊಪ್ಪಾಗಿ ಸಾರಿತು ಸರಿದು ಹಿನ್ನೆಲೆಗೆ
ಸುರಿಯಲಂಬರುಣಾಂಬುಗಳ ನದಿ
ಹೊರಮುರಿಯೆ ದೊರೆನಿಕ್ಕಿದರು ಬೊ
ಬ್ಬಿರಿದಿರಿವ ದನಿ ದಟ್ಟಿಸಿತು ನಿಸ್ಸಾಳಯುದ ದನಿಯ ೧೨

ನೂಕಿದೊಡೆ ಕರ್ಣಾದಿ ದೊರೆಗಳ
ಡಾಕನಾನುವರಾರು ದಿವಿಜಾ
ನೀಕದಲಿ ದಕ್ಕಡರುಸುರು ದುವ್ವಾಳಿಸಿತು ನಭಕೆ
ತೋಕಿದವು ನಾರಾಚ ದೆಸೆ ದೆಸೆ
ಯೋಕರಿಸಿದವೊ ಸರಳನೆನೆ ಸ
ವ್ಯಾಕುಳರ ಹಿಂದಿಕ್ಕಿ ಹಿಂಡಿದವಸುವನತಿ ಬಲರ ೧೩

ಮುರಿದುದಾ ಗಂಧರ್ವಬಲ ಹೊ
ಕ್ಕಿರಿದು ಕೌರವ ರಾಯ ದಳದಲಿ
ಕುರುಹಿನವರಪ್ಪಿದರು ಖಚರೀಜನದ ಕುಚಯುಗವ
ಉರುಬಿತರೆನೆಲೆ ಚಿತ್ರಸೇನನ
ಸೆರಗ ಹಿಡಿದುದು ಸಮರ ಹೊಯ್ ಹೊಯ್
ಕುರಿ ಮನದ ಕುನ್ನಿಗಳನೆನುತೇರಿದನು ಮಣಿರಥವ ೧೪

ಧನುವ ಕೊಂಡನು ತನ್ನ ತೂಕದ
ವಿನುತ ಭಟರೊಗ್ಗಾಯ್ತು ವಾದ್ಯ
ಧ್ವನಿಯು ದಟ್ಟಣೆ ಧಾತುಗೆಡಿಸಿತು ಜಗದ ಜೋಡಿಗಳ
ಮನುಜರಿವದಿರ ಮುರಿದು ಬಹ ಭಟ
ರನಿಮಿಷರು ಬಯಲಾಯ್ತು ಕಟಕಟ
ದನುಜರಿಪುಗಳ ದೆಸೆಗಳಳಿದವೆ ಶಿವ ಶಿವಾಯೆಂದ ೧೫

ನೂಕಿದನು ಗಂಧರ್ವ ಸೇನೆಯೊ
ಳಾಕೆವಾಳರ ಮುಂದೆ ತಾನವಿ
ವೇಕಿಯೋ ದೊರೆತನದಲಿಪ್ಪನು ಸಕಲದಳ ಸಹಿತ
ಸೋಕಬಹುದೇ ಕರ್ಣ ಕೆಲಬಲ
ದಾಕೆವಾಳರ ಕೊಂಬುದೇ ಪರಿ
ತೋಕಿದನು ಗಂಧರ್ವ ಜಲಧಿಯನೊಂದು ನಿಮಿಷದಲಿ ೧೬

ಗಾಯವಡೆದರು ಕೆಲರು ನೆಲದಲಿ
ಲಾಯ ನೀಡಿತು ಕೆಲಬರಿಗೆ ಪೂ
ರಾಯದೆಸುಗೆಗೆ ಹಸುಗೆಯಾದರು ಭಟರು ದೆಸೆ ದೆಸೆಗೆ
ಆಯುಧದ ಮುದೆಯೊಟ್ಟಿತಾ ಕ
ರ್ಣಾಯತಾಸ್ತ್ರನ ಕೆಣಕಿ ಖೇಚರ
ರಾಯದಳ ನುಗ್ಗಾಯ್ತು ದೊರೆ ಹೊಕ್ಕನು ಮಹಾಹವವ ೧೭

ತೊಲಗು ಮರ್ತ್ಯರಿಗೀಸು ದರ್ಪದ
ಕಲಿತನವೆ ಘಡ ನಿಮಿಷ ಸ್ಥೈರಿಸು
ಹುಲು ಭಟರ ಹುರಿದೀ ಪ್ರತಾಪಾನಳನ ಸೆಗಳಿನಲಿ
ಅಳುಕುವುದೆ ಖಚರೇಂದ್ರ ಜಲಧರ
ನೆಲವೊ ತೋರಾ ಚಾಪ ವಿದ್ಯಾ
ಕಲೆಯದೆನ್ನೊಡನೆನುತ ಬೊಬ್ಬಿರಿದೆಚ್ಚನಿನಸುತನ ೧೮

ಹೇಳಬಹುದೆ ಸುರೇಂದ್ರ ಭವನದ
ಸೂಳೆಯರ ಸೂಳಾಯತದ ವಾ
ಚಾಳತನವೇ ನೆರವೆ ನಟರಿಗೆ ಮುಖ್ಯ ವಿದ್ಯೆಯಲ
ಅಳುತನದಂಗದಲಿ ಬಹರೆ ಶ
ರಾಳಿಯಲಿ ಮಾತಾಡೆನುತ ಕೆಂ
ಗೋಲಿನಲಿ ಸಲೆ ಹೂಳಿದನು ಉದ್ಯಾನವನತಳವ ೧೯

ಪೂತು ಮಝು ಮರ್ತ್ಯರಲಿ ಬಿಲು ವಿ
ದ್ಯಾತಿಶಯ ಕಿರಿದುಂಟಲಾ ತಾ
ನೀತ ಕರ್ಣನೆ ಕೌರವೇಂದ್ರಗೆ ಬೇಹ ಭಟನಿವನೆ
ಆತುಕೊಳ್ಳಾದೊಡೆಯೆನುತ ದಿ
ಗ್ವ್ರಾತವಂಬಿನಲಡಗೆ ರಿಪು ಶರ
ಜಾತವನು ಹರೆಗಡಿದು ಕರ್ಣನ ಧನುವ ಖಂಡಿಸಿದ ೨೦

ಇದು ಶರಾವಳಿಯಹುದು ಸರಿಗಮ
ಪದನಿಗಳ ಸರವಲ್ಲಲಾ ಸೇ
ರಿದ ಧನುರ್ವಿದ್ಯಾತಿಶಯ ಯೋಗ್ಯತೆ ವಿಶೇಷವಲ
ಇದೆ ಮನುಷ್ಯರ ಕಲುಹೆ ನೋಡೆನು
ತೊದರಿ ಹೊಸ ಚಾಪದಲಿ ಕಲಿ ಚಿ
ಮ್ಮಿದನು ಚಾಮೀಕರ ಸುರೇಖಾವಳಿ ಶಿಲೀಮುಖವ ೨೧

ಕಡಿದು ಗಂಧರ್ವನ ಶರೌಘವ
ನಡಸಿ ನೆಟ್ಟವು ಕರ್ಣಶರ ಸೈ
ಗೆಡಹಿದವು ಕಿಂಪುರುಷ ಗುಹ್ಯಕ ಯಕ್ಷ ರಾಕ್ಷಸರ
ಹೊಡಕರಿಸಿ ಹೊದರೆದ್ದು ಬಲ ಸಂ
ಗಡಿಸಿ ತಲೆವರಿಗೆಯಲಿ ಕರ್ಣನ
ಬಿಡುಸರಳ ಬೀದಿಯಲಿ ಬೆದರದೆ ನೂಕಿತಳವಿಯಲಿ ೨೨

ಸಂಧಿಸಿತು ಪಡೆ ಚಿತ್ರಸೇನನ
ಹಿಂದೆ ನಿಲಿಸಿ ವಿರೋಧಿ ಶರ ಹತಿ
ಗಂದವಳಿಯದೆ ಮುತ್ತಿದುದು ಕಟ್ಟಳವಿಯಲಿ ರಥವ
ಮುಂದುಗೆಟ್ಟನು ಕರ್ಣನೆನೆ ಕೈ
ಗುಂದಿದರು ಸೌಬಲ ಸುಯೋಧನ
ನಂದನರು ದುಶ್ಯಾಸನಾದಿ ಸಮಸ್ತ ಪರಿವಾರ ೨೩

ನೊರಜಿನೆರಕೆಯು ಗಾಳಿಯುಲಿ ಹೆ
ಮ್ಮರದ ಮೊದಲಳುಕುವುದೆ ಘಡ ಕಾ
ತರಿಸದಿರಿ ಕೌರವರೆನುತ ಕಲಿಕರ್ಣ ಬೊಬ್ಬಿರಿದ
ಶರನಿಧಿಗೆ ವಡಬಾಗ್ನಿ ಮುನಿವವೊ
ಲುರುವಣಿಪ ಹೆಬ್ಬುಲವನೊಂದೇ
ಸರಳಿನಲಿ ಸವರಿದನು ಸುಳಿಸಿದನೌಕಿ ನಿಜರಥವ ೨೪

ಗೆದ್ದುದೇ ರಣವೆಲವೊ ದಿವಿಜರ
ದೊದ್ದೆಯದ ಸೂಳೆಯರ ಚೌರಿಗೆ
ಬಿದ್ದಿನರ ವೀಳಯದ ಬದಗರು ಭಟರ ವೋಡಿಯಲಿ
ಹೊದ್ದಿದೊಡೆ ಹುರುಳಹರೆ ಭಯರಸ
ಗದ್ದುಗೆಯ ಮಂಜಿಡಿಕೆ ಮನದವ
ರಿದ್ದು ಫಲವೇನೆನುತ ಕೈ ಮಾಡಿದನು ಕಲಿಕರ್ಣ ೨೫

ನೊಂದುದಾತನ ಪೊರೆಯ ಸುಭಟರ
ಸಂದಣಿಗಳಿಕ್ಕಲಿಸಿ ಬಿದ್ದುದು
ಮುಂದೆ ಬಲು ಗಂಧರ್ವ ಬಲವಿನಸುತನ ಶರಹತಿಗೆ
ಒಂದು ನಿಮಿಷಕೆ ಮತ್ತೆ ಪಡಿಬಲ
ಬಂದುದಗಣಿತ ಯಕ್ಷರಾಕ್ಷಸ
ವೃಂದ ಮುಕ್ಕುರುಕಿದುದು ಕರ್ಣನ ರಥದ ಮುಂಕಣಿಯ ೨೬

ಅರಸ ಕೇಳೀಚೆಯಲಿ ಕೌರವ
ರರಸ ಬಂದನು ಸರ್ವದಳ ಸಹಿ
ತೆರಡು ಬಲದುಬ್ಬರದ ಬೊಬ್ಬೆಗೆ ಬಿರಿದುದವನಿತಳ
ನರ ವೃಕೋದರ ನಕುಲ ಮೊದಲಾ
ದರು ಕುತೂಹಲವಿವರ ಸುತ್ತಣ
ಮೊರಡಿಗಳ ಮೇಲಿದ್ದು ನೋಡಿದರೀ ಮಹಾಹವವ ೨೭

ತೆಗೆಸಿದನು ನೃಪನಿನಸುತನ ಮು
ತ್ತಿಗೆಯ ನೆರೆದೊಡ್ಡಿನಲಿ ಸೂಸುವ
ಹೊಗರಗಣೆಗಳ ಹೊಯ್ಲುಡಾಯುಧ ಕಡಿವ ಪರಶುಗಳ
ಬಿಗಿವ ಸಬಳದ ಲೋಟಿಸುವ ಲೌ
ಡಿಗಳ ಚಿಮ್ಮುವ ಸುರಗಿಗಳ ಕಾ
ಳಗದ ರೌದ್ರಾಟೋಪ ರಂಜಿಸಿತಮರರಾಲಿಗಳ ೨೮

ನೂಕಿತಿದು ತೋಪಿನ ತುದಿಗೆ ಮಗು
ಳೌಕಿತದು ಪಾಳಯಕೆ ಮುರಿದು
ದಿವೌಕಸರು ಜಾರಿದರು ಜೋಡಿಸಿ ಮತ್ತೆ ಕುರುಬಲವ
ತೋಕುವರು ಗಂಧರ್ವರು ಭಯಾ
ನೀಕದೋಹರಿ ಸಾಹರಿಯ ಸು
ವ್ಯಾಕುಲರನೀಕ್ಷಿಸುತಲಿದ್ದರು ಪವನಜಾದಿಗಳು ೨೯

ಈಸು ಕೊಂಡಾಡಿದರೆ ಸುರರುಪ
ಹಾಸವಾಡುವರೆಮ್ಮನೆನುತ ಮ
ಹಾ ಸಗರ್ವರು ಚಿತ್ರಸೇನನ ಮನ್ನಣೆಯ ಭಟರು
ಪಾಶ ಚಕ್ರ ಮುಸುಂಡಿ ಪರಿಘ
ಪ್ರಾಸ ಪರಶು ಕೃಪಾಣ ಸಬಳ ಶ
ರಾಸನಾದಿಯ ಕೈದುಗಾರರು ಕದನಕನುವಾಯ್ತು ೩೦

ಜೋಡು ಮಾಡಿತು ಖಚರಬಲ ಕೈ
ಗೂಡಿ ಕವಿದುದು ಚಿತ್ರಸೇನನ
ಜೋಡಿಯಲಿ ಜರ್ಝರರಿದ್ದರು ಮುಂದೆ ಮುಂಗುಡಿಯ
ಆಡಿದೊಡೆ ಹಾವಿಂಗೆ ಹದ್ದಿನ
ಕೂಡೆ ಮರುಕವೆ ಘಡಯೆನುತ ಕೈ
ಮಾಡಿದರು ರಿಪುಭಟರು ನಿಂದರು ನಿಮಿಷ ಮಾತ್ರದಲಿ ೩೧

ಗಿಳಿಯು ಹಿಂಡಿನ ಮೇಲೆ ಗಿಡಗನ
ಬಳಗ ಕವಿದಂದದಲಿ ಸೂಟಿಯ
ಲಳವಿಗೊಡ್ಡಿದ ಚಾತುರಂಗವ ಚಿನಕಡಿಯ ಮಾಡಿ
ಎಲೆ ಸುಯೋಧನ ಬೀಳು ಕೈದುವ
ನಿಳುಹಿ ಖೇಚರ ರಾಯನಂಘ್ರಿಯೊ
ಳೆಲವೊ ರವಿಸುತ ಹೋಗೆನುತ ಹೊಕ್ಕಿರಿದರುರವಣಿಸಿ ೩೨

ಗರುವರೇ ನೀವೆಲವೊ ಸುರಪನ
ಪುರದ ನಟ್ಟವಿಗರು ಸುಯೋಧನ
ನರಮನೆಯ ನಟ್ಟವಿಗಳಿಗೆ ಪಾಡಹರೆ ತೊಡಕುವೊಡೆ
ಅರಸು ಪರಿಯಂತಾರು ನೀವೆನು
ತರಿ ಭಟರಿಗಾಗ್ನೇಯ ವಾರುಣ
ನಿರುತಿ ಮೊದಲಾದಸ್ತ್ರ ಚಯವನು ಕವಿಸಿದನು ಕರ್ಣ ೩೩

ನೈರುತಕ್ಕಾಗ್ನೇಯ ಯಾಮ್ಯಕ
ವಾರುಣಕೆ ಸುರರೊಡೆಯರೆಮ್ಮಲಿ
ವೈರಬಂಧವಿದುಂಟೆ ಸಾಧನವಹರೆ ದಿವ್ಯಶರ
ಸೇರಿದರೆ ನಿನಗಾದರಿದ ಕೋ
ವಾರುಣ ಪ್ರತಿಕಾರ ಪಾವಕ
ನೈರುತಾದಿಗೆ ಕೊಳ್ಳೆನುತ ಗಂಧರ್ವಪತಿಯೆಚ್ಚ ೩೪

ಗಬ್ಬರಿಸಿದವು ದಿವ್ಯಶರ ಚಯ
ಗರ್ಭವಪ್ರತಿಕಾರ ಶರ ಮಗು
ಳೆಬ್ಬಿಸಿದನಿನಸೂನು ಪರ್ವತ ತಿಮಿರ ಫಣಿಶರವ
ಪರ್ಬತಕೆ ವಜ್ರಾಸ್ತ್ರ ತಿಮಿರದ
ಹಬ್ಬುಗೆಗೆ ರವಿಬಾಣ ಹಾವುಗ
ಳೊಬ್ಬುಳಿಗೆ ಗರುಡಾಸ್ತ್ರವನು ಗಂಧರ್ವ ಪತಿಯೆಚ್ಚ ೩೫

ಸವೆದವಿನಸುತನಂಬು ಖೇಚರ
ನವಗಡಿಸಿ ಕವಿದೆಚ್ಚನೀತನ
ಸವಗ ಸೀಸಕ ಜೋಡು ತೊಟ್ಟವು ಸರಳ ಜೋಡುಗಳ
ಕವಿದುದೆಡಬಲವಂಕದಲಿ ಸುರ
ನಿವಹ ಸೂಟಿಯ ಸರಳ ಸೋನೆಗೆ
ಡವರಿಸಿದವಡಿಗಡಿಗೆ ಕರ್ಣನ ರಥದ ವಾಜಿಗಳು ೩೬

ಜೋಡಿ ಹರಿದುದು ಸೀಸಕದ ದಡಿ
ಬೀಡು ಬಿರಿದುದು ತಲೆಯ ಚಿಪ್ಪಿನ
ಜೋಡು ಜರಿದುದು ಮನಕೆ ಸುರಿದುದು ಸೊಗಡು ರಣರಭಸ
ಖೋಡಿ ಕೊಪ್ಪರಿಸಿದುದು ಧೈರ್ಯವ
ನೀಡಿರಿದುದಪದೆಸೆ ವಿಕಾಳಿಸಿ
ಖೇಡತನ ಭುಲ್ಲೈಸುತಿದ್ದುದು ಭಾನುನಂದನನ ೩೭

ಮತ್ತೆ ಕೊಂಡನು ಬಿಲು ಸರಳ ನಭ
ಕೊತ್ತಿದನು ರಣ ಭಯುಪವನಹಿತನ
ಕುತ್ತಿದನು ಕಂಗಳಲಿ ಕುಡಿದನು ಮನದಲರಿ ಭಟನ
ಕೆತ್ತಿದನು ಕೊರಲಗಿನಲಿ ಮುಳು
ಮುತ್ತ ಹೂತಂದದಲಿ ಹುದುಗಿದ
ನೆತ್ತರಿನ ನೆಣ ವಸೆಯುಲಿಸೆದನು ರಣದೊಳಾ ಖಚರ ೩೮

ನೊಂದಡುಬ್ಬಿತು ದರ್ಪಶಿಖಿ ಖತಿ
ಗೊಂಡು ಮದದುಬ್ಬಿನಲಿ ಘಾತದ
ಕಂದುಕದವೋಲ್ ಕುಣಿದುದಂತಃಖೇದ ಕೊಬ್ಬಿನಲಿ
ನೊಂದುದಿನಿಸಿಲ್ಲಕಟ ದೈತ್ಯರ
ದಂದುಗದಲಾವಿಂದು ಮರ್ತ್ಯರು
ಬಂದಿವಿಡಿದರೆ ಬಲುಹನೆನುತೋರಂತೆ ಚಿಂತಿಸಿದ ೩೯

ಖತಿಯಲುಗಿದನು ದಿವ್ಯಬಾಣ
ಪ್ರತತಿಯನು ರಥಸೂತ ಹಯ ಸಂ
ತತಿ ಶರಾಸನ ಕೇತುದಂಡಚ್ಛತ್ರ ಚಾಮರವ
ಹುತವಹನೊಳೊಟ್ಟಿದನು ಸಮರ
ವ್ಯತಿಕರದಲಾಗ್ನೇಯ ಶರ ಚಿ
ಮ್ಮಿತು ಚಡಾಳಿಸಿ ಕೆಂಡ ಕೆದರಲು ಕರ್ಣ ಬೆರಗಾದ ೪೦

ವಿರಥನಾದನು ಹಲಗೆ ಖಡ್ಗದ
ಲರಿಭಟನ ಸಮ್ಮುಖಕೆ ಚಿಮ್ಮಿದ
ರೆರಡನೊಂದಂಬಿನಲಿ ಕಡಿದನು ಜಡಿದನಿನಸುತನ
ತಿರುಗಿ ಹಾಯ್ದನು ಬಳಿಕ ಕರ್ಣನ
ಮುರಿವ ಕಂಡು ವಿಕರ್ಣ ತನ್ನಯ
ವರರಥವ ಚಾಚಿದನು ಬೋಳೈಸಿದನು ರವಿಸುತನ ೪೧

ಪೈಸರಿಸಿತೋ ಕುರು ಚತುರ್ಬಲ
ಗಾಸಿಯಾದನು ಕರ್ಣನಿದು ದೊರೆ
ಗೈಸಲೇ ದುಮ್ಮಾನವೆನುತಲ್ಲಲ್ಲಿ ಕುರುಸೇನೆ
ಓಸರಿಸಿತಡತರದ ಮುಖದಲಿ
ಸೂಸಿದರು ಸಮರಥರು ಸೋಲವ
ನಾ ಸುಯೋಧನ ನಗುತ ಕಂಡನು ನೋಡಿ ಕೆಲಬಲನ ೪೨

ಅವನಿಪನ ಮೊಗಸನ್ನೆಯಲಿ ಸೂ
ಳವಿಸಿದವು ನಿಸ್ಸಾಳ ಕೋಟಿಗ
ಳವಚಿದುದು ಬಹುವಿಧದ ವಾದ್ಯಧ್ವನಿ ದಿಶಾಮುಖವ
ತವತವಗೆ ಧುರ ತೋರಹತ್ತರು
ತವಕಿಸುತ ಹರಿಯೇರಿದರು ಕೌ
ರವರು ಕರ್ಣನ ಹರಿಬದಾಹವವೆಮಗೆ ತಮಗೆನುತ ೪೩

ಮುರಿದು ದಳ ಸಂವರಿಸಿ ಪಡಿಮುಖ
ಕುರುಬಿದುದು ದುರಿಯೋಧನಾನುಜ
ರರಸಿದರು ಗಂಧರ್ವನಾವೆಡೆ ತೋರು ತೋರೆನುತ
ತರುಬುವುದು ಜಯವೊಮ್ಮೆ ಮನದಲಿ
ಕನಲುವುದು ಮತ್ತೊಮ್ಮೆ ತಪ್ಪೇ
ಹಿರಿದ ಸಾಹಸವ ತೋರೆನುತ ಬೆರಸಿದರು ಪರಬಲವ ೪೪

ಅರಸನನುಜರೆ ನೀವು ಕರ್ಣನ
ಹರಿಬದವರೇ ಹರ ಹರೆಮಗಿ
ನ್ನರಿದಲೈ ನಿಮಗೀಸು ಖತಿ ಜೋಂಪಿಸಿದುದಿನ್ನೇನು
ತರಹರವು ನಮಗಿಲ್ಲಲಾ ಪೂ
ತುರೆಯೆನುತ ಪಡಿತಳಿಸಿ ಗಂಧ
ರ್ವರ ಚಮೂಪರು ನೂಕಿದರು ತರುಬಿದರು ಪರಬಲವ ೪೫

ಎಚ್ಚರಿರಿದರು ಹೊಯ್ದರಿಟ್ಟರು
ಚುಚ್ಚಿದರು ಸೀಳಿದರು ನೂಕಿದ
ರಿಚ್ಚಟರ ಸೇದಿದರು ದಡಿವಲೆ ಕಣ್ಣಿವಲೆಗಳಲಿ
ಕೊಚ್ಚಿದರು ನುಗ್ಗಿದರು ಕೊಯ್ದರು
ನುಚ್ಚುನುರಿ ಮಾಡಿದರು ಹರಿಬಕೆ
ಹೆಚ್ಚಿ ಹೊಗುವವನೀಶನನುಜರ ಮನ್ನಣೆಯ ಭಟರ ೪೬

ಗಾಯವಡೆಯದರಿಲ್ಲ ಸಾಯದೆ
ನೋಯದವರಿಲ್ಲೆರಡು ಬಲದಲಿ
ಬೀಯವಾದರು ಸುಭಟರೆನೆ ಗಂಧರ್ವಪತಿ ಮುಳಿದು
ರಾಯನನುಜರ ಥಟ್ಟಿದನು ದೀ
ರ್ಘಾಯುವನು ಹಿಡಿದನು ವಿಕರ್ಣನ
ನೋಯಲೆಚ್ಚನು ಕೆದರಿದನು ಕೌರವ ಚತುರ್ಬಲವ ೪೭

ಫಡಯೆನುತ ಕುರುರಾಯನಾತನ
ಪಡಿಮುಖಕೆ ನೂಕಿದನು ಜೋಡಿಸಿ
ಜಡಿವ ನಿಸ್ಸಾಳಾಯುತದ ಕಹಳೆಗಳ ಕಳಕಳದ
ಬಿಡುರಥದ ದಟ್ಟಣೆಯ ಧಾಳಿಯ
ಕಡುಗುದುರೆಗಳ ನೆತ್ತಿಯಂಕುಶ
ದೆಡೆಯ ಘಟೆಯಾನೆಗಳ ದಳ ಸಂದಣಿಸಿತೊಗ್ಗಿನಲಿ ೪೮

ನುಗ್ಗನಿವ ಕೈಕೊಂಬನೇ ರಣ
ದಗ್ಗಳರ ಮೂಳೆಯಲಿ ಕದನದ
ಹುಗ್ಗಿಗರ ಸಾಕಿದನು ಶಾಕಿನಿ ಡಾಕಿನೀ ಗಣವ
ಒಗ್ಗಿ ಕವಿವರನಿಂದ್ರ ಲೋಕದ
ಸುಗ್ಗಿಯಲಿ ಸೇರಿಸಿದನಾಹವ
ದುಗ್ಗಡವನೇನೆಂಬೆನೈ ಗಂಧರ್ವ ವಿಕ್ರಮವ ೪೯

ಮಿಾಟೆನಿಪ ಗಂಧರ್ವರೊಂದೇ
ಕೋಟಿ ಕವಿದುದು ಕುರುಬಲಕೆ ಪಡಿ
ಗೋಟೆಯಾದುದು ನೃಪತಿ ಸಿಲುಕಿದನವರ ವೇಡೆಯಲಿ
ದಾಟಿತರಸನ ಧೈರ್ಯ ಕೈದುಗ
ಳಾಟ ನಿಂದುದು ಕರದ ಹೊಯ್ಲಿನ
ನೋಟಕರು ಗೊಳ್ಳೆಂದರಿತ್ತಲು ಪಾಂಡವರ ವನದಿ ೫೦

ಅರರೆ ದೊರೆ ದೊರೆ ಡೊಂಬಿಯಲಿ ಡಾ
ವರಿಸುವರ ಹೊಯ್ ಹೊಯ್ಯೆನುತ ಖೇ
ಚರರ ಕಂಬಿಗಳಾಡಿದವು ಸುತ್ತಲು ಸುಯೋಧನನ
ಅರಸರಂಜದಿರಂಜಬೇಡೆನು
ತುರವಣಿಸಿ ಕೌರವ ನರೇಂದ್ರನ
ಕರದ ಧನುವನು ಕಳೆದು ಕೊಂಡನು ಖಚರಪತಿ ನಗುತ ೫೧

ಹಯದ ಪಡಿವಾಘೆಯಲಿ ಬಾಹು
ದ್ವಯವ ಬಿಗಿದನು ತನ್ನ ರಥದಲಿ
ಜಯವಿಹೀನನ ತಂದು ಕುಳ್ಳಿರಿಸಿದನು ಕೌರವನ
ಭಯಭರಿತ ದುಶ್ಶಾಸನನ ದು
ರ್ಜಯನ ಚಿತ್ರಾಂಗದ ವಿಕರ್ಣನ
ನಯವಿದೂರರ ತಂದರಿಪ್ಪತ್ತೈದು ಸಹಭವರ ೫೨

ಇಳಿದು ಗಜವನು ಕೈದುಗಳ ನೆಲ
ಕಿಳುಹಿ ಜೋಧರು ವಾರುವದಿನಿಳೆ
ಗಿಳಿದು ರಾವುತರು ಹಾಯ್ಕಿದರು ದೂಹತ್ತಿ ಲೌಡಿಗಳ
ಬಿಲು ಸರಳ್ಗಳ ಬಿಸುಟು ರಥಿಕರು
ನೆಲಕೆ ಹಾಯ್ದರು ಕೈಯ ಕೈದುವ
ನಿಳುಹಿ ಪಯದಳ ಬೀಳುಗೊಂಡುದು ಖೇಚರೇಶ್ವರನ ೫೩

ಮುಟ್ಟದಿರಿ ಪರಿವಾರ ಕೈದುವ
ಕೊಟ್ಟು ಹೋಗಲಿ ದೊರೆಗಳಾದರ
ಬಿಟ್ಟವರಿಗಮರೇಂದ್ರನಾಣೆಯೆನುತ್ತ ಸಾರಿದರು
ಕೆಟ್ಟುದೀ ಕುರುಪತಿಯ ದಳ ಜಗ
ಜಟ್ಟಿಗಳು ಕರ್ಣಾದಿಗಳು ಮುಸು
ಕಿಟ್ಟು ಜಾರಿತು ಕಂಡ ದೆಸೆಗವನೀಶ ಕೇಳೆಂದ ೫೪

ಖಿನ್ನನಾದನು ಪಾರ್ಥನನಿಲಜ
ನುನ್ನತೋತ್ಸವನಾದನತಿ ಸಂ
ಪನ್ನ ಸಮ್ಮದರಾದರಾ ಮಾದ್ರೀಕುಮಾರಕರು
ಇನ್ನು ಪಾಂಡವ ರಾಜ್ಯಸಿರಿಯೆಮ
ಗಿನ್ನು ಲೇಸಹುದಕಟ ದೈವದ
ಗನ್ನಗತಕವೆಯೆನುತ ಹಿಗ್ಗಿತು ಮುನಿವಧೂ ನಿಕರ ೫೫

ಭಾವನವರರ್ತಿಯಲಿ ಜಲ ಕೇ
ಳೀ ವಿನೋದಕೆ ಬಂದು ಗಂಧ
ರ್ವಾವಳಿಯ ಕೇಳಿಯಲಿ ಚಿತ್ತೈಸಿದಿರಲಾಯೆನುತ
ದೇವಿಯರು ನಸುನಗುತ ಚಿತ್ರದ
ಚಾವಡಿಯಲೋಲೈಸಿ ಕೊಂಡರು
ಭೂವಳಯದೇಕಾಧಿಪತ್ಯದ ಸೌಖ್ಯಸಂಪದವ ೫೬

ಕೇಳಿದನು ಯಮಸೂನು ದುಗುಡವ
ತಾಳಿದನು ನಳ ನಹುಷ ಭರತ ನೃ
ಪಾಲ ಪಾರಂಪರೆಯಲುದಿಸಿದ ಸೋಮ ವಂಶದಲಿ
ಕೋಳುವೋದುದೆ ಕೀರ್ತಿ ನಮ್ಮಾ
ಬಾಳಿಕೆಯು ಸುಡಲೆನುತ ಚಿಂತಾ
ಲೋಲ ಚಿತ್ತನು ನೆನೆವುತಿದ್ದನು ವೀರ ನರಯಣನ ೫೭

ಇಪ್ಪತ್ತನೆಯ ಸಂಧಿ

ಸೂ. ರಾಯ ದಳವನು ಮುರಿದು ಕೌರವ
ರಾಯನನು ಕೊಂಡೊಯ್ವ ಖೇಚರ
ರಾಯನನು ತಾಗಿದನು ಮರಳಿಚಿ ತಂದನಾ ಪಾರ್ಥ

ಕೇಳು ಜನಮೇಜಯ ಧರಿತ್ರೀ
ಪಾಲ ಸಿಕ್ಕಿದನತ್ತ ಕುರು ಭೂ
ಪಾಲನದನೇ ಹೇಳುವೆನು ಪಾಳಯದ ಗಜಬಜವ
ಆಳು ನಡೆದುದು ಕಂಡ ಮುಖದಲಿ
ಕೀಳು ಮೇಲೊಂದಾಯ್ತು ಧನಿಕರ
ಪೀಳಿಗೆಯ ಧನ ಸೂರೆಯೋದುದು ಕೇರಿ ಕೇರಿಯಲಿ ೧

ಕುದುರೆ ಹಾಯ್ದವು ಕಂಡ ಮುಖದಲಿ
ಮದಗಜಾವಳಿಯೋಡಿದವು ರಥ
ಕೆದರಿದವು ಕಾಲಾಳು ಹಾಯ್ದರು ಬಿಟ್ಟ ಮಂಡೆಯಲಿ
ಕದಡಿದುದು ಜನಜಲಧಿ ಜಾಡಿಸಿ
ಬೆದರಿದವು ಕೇರಿಗಳು ರಾಯನ
ಹದನದೇನೇನೆನುತ ಹರಿದರು ಹರದರಗಲದಲಿ ೨

ಗಾಳಿಯರಿಯದು ರವಿಯ ಕಿರಣಕೆ
ಬಾಲೆಯರು ಗೋಚರವೆ ದಡ್ಡಿಯ
ಮೇಲುಬೀಯಗದಂಗರಕ್ಷೆಯ ಕಂಚುಕೀ ಜನದ
ಮೇಳವವದೇನಾಯ್ತೊ ಬೀದಿಯ
ಗಾಳು ಮಂದಿಯ ನಡುವೆ ಕುರು ಭೂ
ಪಾಲನರಸಿಯರಳುತ ಹರಿದರು ಬಿಟ್ಟಮಂಡೆಯಲಿ ೩

ಕುರುಪತಿಯ ದುಶ್ಶಾಸನಾದಿಗಳ
ಳರಸಿಯರು ಭಟ ಭಟರೊಳೊದರಿದ
ರರಸನುಪಹತಿಗೊಪ್ಪುಗೊಟ್ಟರೆ ಕರ್ಣ ಶಕುನಿಗಳು
ಗುರು ನದೀಸುತರಿದ್ದರೀ ಪರಿ
ಪರಿಭವಕೆ ಪಾಡಹುದೆ ಪಾಂಡವ
ರರಸನಿಹ ವನವಾವುದೆಂದರಸಿದಳು ಭಾನುಮತಿ ೪

ಅರಸಿಯರು ಸಖಿಯರು ಕುಮಾರಕ
ರರಸನನುಜರ ಹೆಂಡಿರನಿಬರು
ವೆರಸಿ ಬಂದಳು ಭಾನುಮತಿ ಯಮತನುಜನಾಶ್ರಮಕೆ
ಕರುಣಿ ರಕ್ಷಿಸು ಸೋಮ ವಂಶೋ
ದ್ಧರಣ ರಕ್ಷಿಸು ಸತ್ಯ ಧರ್ಮದ
ಸಿರಿಯೆ ರಕ್ಷಿಸೆನುತ್ತ ಧೊಪ್ಪನೆ ಬಿದ್ದಳಂಘ್ರಿಯಲಿ ೫

ನಾದಿದಳು ನೃಪನಂಘ್ರಿಯನು ನಯ
ನೋದಕದ ಧಾರೆಯಲಿ ಭಾಳವ
ತೇದು ತಿಲಕದ ಗಂಧದಲಿ ಬೈತಲೆಯ ಮುತ್ತುಗಳ
ಆದರಿಸಿ ನವ ಕುಸುಮದಲಿ ಘನ
ರೋದನ ಧ್ವನಿ ಮಂತ್ರದಲಿ ನೃಪ
ಪಾದ ಪೂಜೆಯ ರಚಿಸುವವೊಲೊಪ್ಪಿದಳು ಭಾನುಮತಿ ೬

ಖಳರು ಕೌರವರಿಂದು ಸಜ್ಜನ
ಕುಲ ಶಿರೋಮಣಿ ನೀನು ಕರುಣಾ
ಜಲಧಿ ನಿನಗಪರಾಧಿಗಳು ನಾವಹೆವು ಜಗವರಿಯೆ
ಹುಳಿಗೆ ಹಾಲಳುಕಿದರೆ ಹಾಲಿನ
ಜಲಧಿ ಕೆಡುವುದೆ ಜೀಯ ನಿನ್ನವ
ರೆಳಸಿ ಕೊಂಡರು ಕಾಯಬೇಕೆಂದೊರಲಿದಳು ತರಳೆ ೭

ರಾಯರಿಗೆ ಬಿನ್ನಹವ ಮಾಡೌ
ತಾಯೆ ದುರುಪದಿ ದೇವಿಯೇ ಹಿರಿ
ದಾಯಸವಬಡಿಸಿದನು ಕುರುಪತಿ ನಿನ್ನ ಮೈದುನನು
ನೋಯಿಸಲು ಸಿರಿಖಂಡ ನಿಜ ಗುಣ
ದಾಯತವ ಬಿಡದಂತೆ ನೀವೇ
ಕಾಯಬೇಹುದು ಪತಿಯನೆಂದೊರಳಿದಳು ಭಾನುಮತಿ ೮

ಚುಂಬಿಸಿತು ಕಡುಶೋಕ ಮಿಡಿದನು
ಕಂಬನಿಯನುಗುರಿನಲಿ ಘನ ಕರು
ಣಾಂಬುನಿಧಿ ಸೀಗುರಿಸಿ ಮೈಗೂಡಿರಿದ ರೋಮದಲಿ
ಹಂಬಲಿಸಬೇಡಕಟ ಕುರುಪತಿ
ಯೆಂಬನಾರೌ ಬೊಪ್ಪನವರೇ
ನೆಂಬರೇಳೌ ತಾಯೆಯೆನುತೆತ್ತಿದನು ಭಾಮಿನಿಯ ೯

ಭೀಮ ಬಾ ಕುರುರಾಜಕುಲ ಚೂ
ಡಾಮಣಿಯೆ ತಾ ಹೋಗು ಕದನೋ
ದ್ದಾಮ ದರ್ಪನ ತಾ ನಿಜಾನ್ವಯ ಕುಮುದ ಚಂದ್ರಮನ
ತಾ ಮನೋವ್ಯಥೆ ಬೇಡ ನೃಪ ಚಿಂ
ತಾಮಣಿಯ ತಾಯೆನಲು ಕರಯುಗ
ತಾಮರಸವನು ಮುಗಿದು ಬಿನ್ನಹ ಮಾಡಿದನು ಭೀಮ ೧೦

ಬೆಸಸಬೇಹುದು ನೀತಿಶಾಸ್ತ್ರದ
ಬೆಸುಗೆ ತಪ್ಪದೆ ರಾಜ ಧರ್ಮದ
ಮುಸುಡು ಕಂದದೆ ಖೋಡಿವಿಡಿಯದೆ ಕುಶಲರಾದವರು
ಎಸಗುವದು ನಾವಾವ ಕಾರ್ಯದೊ
ಳಸುವನಿಕ್ಕಿ ತದರ್ಥವನು ಪರ
ರೆಸಗಿದೊಡೆ ನಮಗೇನು ಬಾಧಕವೆಂದನಾ ಭೀಮ ೧೧

ತಮ್ಮ ಸಂಕಟಕಿವರು ವಿನಯವ
ನೆಮ್ಮಿ ಬಿನ್ನಹ ಮಾಡುತಿರ್ದೊಡೆ
ನಿಮ್ಮಡಿಗೆ ಪರಿತೋಷವೇ ಕರ್ತವ್ಯ ವಿಷಯದಲಿ
ಎಮ್ಮ ಮನ ಮುಂಚುವುದು ಕಾರ್ಯದ
ಹಮ್ಮುಗೆಯು ನೀವರಿಯಿರೇ ತಮ
ತಮ್ಮ ದುಷ್ಕೃತ ತಮಗೆ ಫಲಿಸಿದರೇನು ನಿಮಗೆಂದ ೧೨

ಅನುಜ ಕೇಳಪಕಾರಿ ಜನದಲಿ
ನೆನೆವುದುಪಕಾರವನು ಗುಣ ಹೀ
ನನಲಿ ಗುಣವನು ತೋರುವದು ಗರುವರಿಗೆ ತೊಡಿಗೆಯಿದು
ಅನುಜನಲ್ಲಾ ನಮಗೆ ಕೌರವ
ಜನಪನವರಪರಾಧ ಶತವನು
ನೆನೆವೊಡಿದು ದೊಡ್ಡೋ ಮಹಾದೇವೆಂದನಾ ಭೂಪ ೧೩

ಭರತ ವಂಶದೊಳವರ ಭಂಗವೆ
ನಿರುತವೆಮ್ಮದು ನಮ್ಮ ಭಂಗ
ಸ್ಫುರಣವವರದು ತಾವರಿಯರಾವರಿವೆವೀ ಹದನ
ಪರರ ಕಲಹಕೆ ನಾವು ನೂರೈ
ವರುಗಳಂತಃಕಲಹಕದು ನೂ
ರ್ವರು ವಿಚಾರಿಸಲೈವರಾವೆಂದನು ಮಹೀಪಾಲ ೧೪

ಆವನಾಗಲಿ ಬೇಡಿದಂಗೊಲಿ
ದೀವುದೇ ನೃಪಧರ್ಮ ಹಗೆ ಕೆಳೆ
ಯಾವನಾಗಲಿ ಸೆಣಸಿದೊಡೆ ಕಾದುವದೆ ನೃಪನೀತಿ
ಆವನಾಗಲಿ ಶರಣುವೊಕ್ಕರೆ
ಕಾವುದೇ ಕ್ಷತ್ರಿಯರ ಮತವಿಂ
ತಾವುದುಚಿತವು ಭೀಮ ನೀ ಹೇಳೆಂದನಾ ಭೂಪ ೧೫

ಆರಿಗಾರುಪಕಾರಿಗಳು ಮೇ
ಣಾರಿಗಾರಪಕಾರಿಗಳು ತಾ
ನಾರಿಗಾರುಂಟವರವರ ಕೃತಕರ್ಮ ಸಂಸ್ಕಾರ
ಹೋರಿಸುವುದಳಿಸುವುದು ಸೌಖ್ಯಕೆ
ಸೇರಿಸುವುದಿದಕಹಿತ ಹಿತರೆಂ
ದಾರ ಮುರಿವುದು ಮನ್ನಿಸುವದೈ ಭೀಮ ಹೇಳೆಂದ ೧೬

ಅದರಿನಾಚೆಯು ಭವದ ದುಷ್ಕೃತ
ವೊದಗಿತೀ ಜನ್ಮದಲಿ ವನ ವಾ
ಸದ ಪರಿಕ್ಲೇಶಾನುಭವಕಿವರೇನ ಮಾಡುವರು
ಒದಗಿದುತ್ಸವದಲ್ಲಿ ಪರರ
ಭ್ಯುದಯವನು ಬಯಸುವದು ಪರರಿಗೆ
ಮುದವನಾಚರಿಸುವದು ಧರ್ಮಜ್ಞರಿಗೆ ಗುಣವೆಂದ ೧೭

ಎಣಿಸಲೇಕಿನ್ನದನು ಕೌರವ
ಗಣ ಮರಳಿ ಬಂದಲ್ಲದಾರೋ
ಗಣೆಯ ಮಾಡೆನು ಪಾರ್ಥ ನೀ ನುಡಿ ನಿನ್ನ ಹವಣೇನು
ರಣದೊಳರಿಗಳ ಮುರಿದು ಕುರು ಧಾ
ರುಣಿಪತಿಯ ತಹುದುಂಟೆಯೆನೆ ಬಿಲು
ಗಣೆಗಳನು ತಿದ್ದಿದನು ಫಲುಗುಣ ಹೂಡಿದನು ರಥವ ೧೮

ಎಮಗೆ ನುಡಿ ಬೇರುಂಟೆ ನೀತಿ
ಭ್ರಮಿತರಾವಲ್ಲನಿಲಸುತನು
ಭ್ರಮಿತನವ ಸೈರಿಸುವುದೈ ಕಾರುಣ್ಯನಿಧಿ ನೀನು
ನಿಮಿಷದಲಿ ಗಂಧರ್ವಕನನಾ
ಕ್ರಮಿಸಿ ಕೌರವಗಣವನೀ ಪದ
ಕಮಲದಿದಿರಲಿ ಕೆಡಹಿ ತೋರುವೆನೆನುತ ಹೊರವಂಟ ೧೯

ಮುರಿದು ಚೆಲ್ಲಿದ ಸಕಲ ಕುರುಬಲ
ನೆರೆದುದರ್ಜುನನೊಡನೆ ಸೂಟಿಯೊ
ಳರಿ ಭಟನ ಬೆಂಬತ್ತಿದನು ಫಡ ನಿಲ್ಲು ನಿಲ್ಲೆನುತ
ಸೆರೆಯ ಬಿಡು ಗಂಧರ್ವ ಲೋಕವ
ನುರುಹುವೆನು ಹಿಂದಿಕ್ಕಿ ಕೊಂಬನ
ಶಿರವ ಚೆಂಡಾಡುವೆನೆನುತ ಕವಿದೆಚ್ಚನಾ ಪಾರ್ಥ ೨೦

ಸರಳಿನುಬ್ಬೆಗೆ ಸೆಡೆದು ಸಮರಕೆ
ತಿರುಗಿ ನಿಂದುದು ಖಚರ ಬಲವು
ಬ್ಬರದ ಬೊಬ್ಬೆಯಲುರುಬಿದುದು ಶರಹತಿಗೆ ಸೈರಿಸುತ
ಉರುಳಿದವು ಗಂಧರ್ವ ಶಿರ ನಭ
ಸರಳಮಯ ದಿಗುಜಾಲವಂಬಿನ
ಹೊರಳಿಯಲಿ ಹೊದಿಸಿದುದೆನಲು ಕವಿದೆಚ್ಚನಾ ಪಾರ್ಥ ೨೧

ಮೊರೆವ ಗರಿಗಳ ಮೊನೆಯಲುದುರುವ
ಹೊರಳಿಗಿಡಿಗಳ ಬಾಯ ಧಾರೆಗ
ಳುರಿಯ ಹೊದರಿನ ಹುದಿದ ಹೊಂಬರಹದ ಸುರೇಖೆಗಳ
ಸರಳು ಹೊಕ್ಕವು ಹೆಕ್ಕಿದವು ಖೇ
ಚರ ಬಲವನೊಕ್ಕಿದವು ತೂರಿದ
ವರಿ ಭಟನ ಚುಚ್ಚಿದವು ಹೆಚ್ಚಿದವೆಂಟು ದೆಸೆಗಳಲಿ ೨೨

ಕೋಲ ಬಲುವಳೆಗೊಡ್ಡಿ ಹರಿಗೆಯ
ಮೋಳಯುವ ಮರೆಗೊಂಡು ಖೇಚರ
ರಾಳು ನಿಂದೆಚ್ಚಿತು ನಿಹಾರದಲರ್ಜುನನ ರಥವ
ಕೋಲುಗಳನಾ ಹರಿಗೆ ಹಲಗೆಯ
ಮೋಳಯುವನಾ ಮರೆಯಲುಗಿದೆಸು
ವಾಳನೊಂದಂದಂಬಿನಲಿ ಸಂದಣಿಗೆಡಹಿದನು ಪಾರ್ಥ ೨೩

ಮೆಟ್ಟಿ ಹೆಣನನು ಖಚರಬಲ ಹುರಿ
ಗಟ್ಟಿ ತಲೆವರಿಗೆಯಲಿ ಪಾರ್ಥನ
ಕಟ್ಟಳವಿಯಲಿ ಚೂರಿಸಿದರುಬ್ಬಣದ ಮೊನೆಗಳಲಿ
ದಿಟ್ಟರಹಿರೋ ಕೌರವೇಂದ್ರನ
ಕಟ್ಟಿದಾತನ ಕರೆಯಿ ನಿಮ್ಮನು
ಮುಟ್ಟಿದೊಡೆ ನೃಪನಾಣೆಯೆನುತೊಡಹಾಯ್ಸಿದನು ರಥವ ೨೪

ಗಜದ ಪದಘಟ್ಟಣೆಯ ಬಹಳಂ
ಬುಜದವೊಲು ರಥ ಚಕ್ರಹತಿಯಲಿ
ಗಿಜಿಗಿಜಿಯ ಮಾಡಿಸಿದ ಖೇಚರ ಚಟುಲ ಪಟುಭಟರ
ವಿಜಯನಲ್ಲಾ ಸುರಪುರದ ಮೌ
ರಜಿಗನಾವೆಡೆ ಕುರುಬಲದ ಗಜ
ಬಜದ ಗರುವನ ತೋರೆನುತ ತೂಳಿದನು ಕಲಿಪಾರ್ಥ ೨೫

ಅಳವಿಯಲಿ ಕೈಮಾಡಿ ಖೇಚರ
ರಳಲಿಗರು ಮುಮ್ಮೊಳಿತರಾದರು
ಬೆಳಗಿದವು ದಿವ್ಯಾಸ್ತ್ರಧಾರೆಗಳಖಿಳ ದಿಗುತಟವ
ತಳಪಟದೊಳಾ ಸೆರೆ ಸಹಿತ ಕೈ
ಚಳಕದಲಿ ತೆಗೆದೆಸುತ ಸಮರಕೆ
ಮಲೆತು ನಿಂದನು ಚಿತ್ರಸೇನನು ಪಾರ್ಥನಿದಿರಿನಲಿ ೨೬

ಬಿಡು ಸೆರೆಯನವಗಡೆಯತನವೆ
ಮ್ಮೊಡನೆ ಸಲ್ಲದು ಸೂಳೆಯರ ಸುರೆ
ಗುಡುಹಿಗಳ ರಸವಾದಿಗಳ ಸೇರುವೆಯಲೊಪ್ಪುವುದು
ಫಡಯೆನುತ ನಾರಾಚದಲಿ ಬಲ
ನೆಡನ ಕೀಲಿಸಿ ಪಿಂಗುಡಿಯ ಮುಂ
ಗುಡಿಯ ಕಟ್ಟಿದನಂಬಿನಲಿ ಖಚರಾಧಿಪನ ರಥವ ೨೭

ನೂಕದಿರಲಾಹವಕೆ ಸಮ್ಮುಖಿ
ವೇಕೆನುತ ಹತ್ತಿದನು ಗಗನವ
ನಾ ಕಿರೀಟಿಯ ಗೆಲುವೆನೆಂಬುಬ್ಬರದ ಬೊಬ್ಬೆಯಲಿ
ನಾಕ ನಿಳಯರ ಮಾರ್ಗದೊಳಗ
ವ್ಯಾಕುಳನು ಭುಲ್ಲೈಸಿದೊಡೆ ಲೋ
ಕೈಕವೀರನಲಾ ಧನಂಜಯನಡರಿದನು ನಭವ ೨೮

ಎಲವೊ ಕೌರವ ಸಹಿತ ಕಮಠನ
ಕೆಳಗೆ ಧ್ರುವನಿಂ ಮೇಲೆ ಹೊಕ್ಕರೆ
ಕೊಲುವೆನಲ್ಲದೆ ಬಿಡುವೆನೇ ಫಡ ನಿಲ್ಲು ನಿಲ್ಲೆನುತ
ತುಳುಕಿದನು ಕೆಂಗೋಲನಿನ ಮಂ
ಡಲಕೆ ದಿಗ್ಭ್ರಮೆಯಾಯ್ತು ನಭದಲಿ
ಸುಳಿವ ಸುರರ ವಿಮಾನತತಿ ಚೆಲ್ಲಿದವು ದೆಸೆದೆಸೆಗೆ ೨೯

ತಿರುಗಿ ನಿಂದನು ಖಚರಪತಿ ನಿ
ಷ್ಠುರವಿದೇನೈ ಪಾರ್ಥ ನೀ ಕಡು
ಮರುಳೊ ಮೂಢನೊ ಜಡನೊ ಪಿತ್ತಭ್ರಾಂತಿ ವಿಹ್ವಲನೊ
ಧುರದ ಕೌತುಕ ಗರಳ ಮೂರ್ಛಾಂ
ತರಿತ ಹೃದಯನೊ ನಿಲ್ಲು ಚಾಪದ
ಶರವನುಪಸಂಹರಿಸಿ ನಮ್ಮಯ ಮಾತ ಕೇಳೆಂದ ೩೦

ಹುಲಿಯ ಮುರಿದೊತ್ತಿದೊಡೆ ಪಶು ಸಂ
ಕುಲಕೆ ಸಂಕಟವೇನು ವಾಯಸ
ಕುಲಕೆ ಕೈಮಾಡಿದರೆ ಕೋಟಲೆಯೇನು ಕೋಗಿಲೆಗೆ
ಖಳರ ಕೊಪ್ಪರಿಸಿದೊಡೆ ಸುಜನರ
ತಲೆಗೆ ವೇದನೆಯೇನು ಕೌರವ
ಕುಲವನದ್ದಿದರೇನು ಜಠರದ ಶೂಲೆ ನಿನಗೆಂದ ೩೧

ಹೋದ ಮಾರಿಯ ಕರೆದು ಮನೆಯೊಳ
ಗಾದರಿಸಿದವರುಂಟೆ ನೀರಲಿ
ನಾದ ಕೆಂಡವನುರುಹಿ ಮುಡಿದವರುಂಟೆ ಮುಂಡೆಯಲಿ
ಕೈದು ಮುರಿದೊಡೆ ಹಗೆಗೆ ತನ್ನಯ
ಕೈದು ಕೊಟ್ಟವರುಂಟೆ ಕುರುಪತಿ
ತೀದಡೀತನ ಬಿಡಿಸಿಕೊಂಬಿರೆ ಲೇಸು ಲೇಸೆಂದ ೩೨

ಜನಪ ನೀತಿಯೊ ಮೇಣು ಬೋಳೆಯ
ತನವೊ ಬಿಲು ಜಾಣಿಕೆಯೊ ಬಿಂಕವೊ
ನಿನಗೆ ಕದನದ ಕಲುಹೆಯೋ ನಾವರಿಯೆವಿದನೀಗ
ಬನಕೆ ಮರಳೈ ಮರುಳೆ ನೀ ಪುದು
ಮನೆಯ ಹಾವನು ಹದ್ದು ಹಿಡಿದರೆ
ಮನಕತವ ಮಾಡುವರೆ ಬಿಜಯಂಗೈಯಿ ನೀವೆಂದ ೩೩

ನಟರಲಾ ನೀವ್ ಅಸುರಪುರ ಚಾ
ವಟೆಯರೈ ಚತುರೋಕ್ತಿಗಳ ಲಟ
ಘಟಿಸಿದರೆ ನಾ ಮರುಳುವೆನೆ ಬಿಡು ಬಿಡು ಸುಯೋಧನನ
ಕಟು ಮಧುರ ವುರಿ ಸೀತವತಿ ಸಂ
ಕಟವು ಸುಖ ವಿಷವಮೃತವಾವುದು
ಘಟಿಸಿತಗ್ರಜನಾಜ್ಞೆಯಿದು ನಮಗೆಂದನಾ ಪಾರ್ಥ ೩೪

ಧರ್ಮವಾಗಲಿ ಮೇಣು ಜಗದಲ
ಧರ್ಮವಾಗಲಿ ರಾಜ ಮಂತ್ರದ
ಮರ್ಮವಾಗಲಿ ನೀತಿ ಬಾಹಿರವಾಗಲದು ಮೇಣು
ಧರ್ಮಪುತ್ರನ ಬೆಸನು ವೈದಿಕ
ಧರ್ಮವೆಮಗದು ರಾಜ ಮಂತ್ರದ
ನಿರ್ಮಲಿನ ಮತವೆಮಗೆ ಬೇರೊಂದಿಲ್ಲ ಮತವೆಂದ ೩೫

ನುಸುಳುಗಂಡಿಯಿದಲ್ಲ ಕೌರವ
ವಸುಮತೀಶನನಕಟ ಬಿಡು ನಿ
ನ್ನುಸುರಿಗುಬ್ಬಸ ಮಾಡೆನಂಘ್ರಿಗಳಾಣೆ ಧರ್ಮಜನ
ಮಸುಗುವರೆ ಹಿಡಿ ಧನುವನೆನುತೆ
ಚ್ಚಿಸಿದನವಿರಳ ಶರವನಾತನ
ಮುಸುಕಿದವು ಮುಕ್ಕುರಿಕಿದವು ರಥ ಸನ್ನಿವೇಶದಲಿ ೩೬

ಕೋಲ ಬರಿದೇ ಬೀಯ ಮಾಡದಿ
ರೇಳು ಫಲುಗುಣ ಮರಳು ನೀ ದಿಟ
ಕೇಳುವರೆ ನಾವಿವನ ಕಟ್ಟಿದೆವಿಂದ್ರನಾಜ್ಞೆಯಲಿ
ಪಾಲಿಸಾ ನಿಮ್ಮಯ್ಯ ಬೆಸಸಿದ
ನೇಳಿಸದೆ ಕೇಳೆನಲು ಕೆಂಗರಿ
ಗೋಲ ತೂಗುತ ಪಾರ್ಥ ನುಡಿದನು ಚಿತ್ರಸೇನಂಗೆ ೩೭

ಕುರುಪತಿಯ ಕಟ್ಟುವೊಡೆ ಸುರಪತಿ
ಕರೆದು ಬೆಸಸಿದ ನಿನಗೆಯುವಗೆ
ಮ್ಮರಸ ನೇಮವ ಕೊಟ್ಟನೀ ಕುರುಪತಿಯ ಬಿಡಿಸೆಂದು
ಸುರಪತಿಗೆ ಕೃತಕಾರ್ಯ ನೀನಾ
ಗಿರಲು ನಾವಕೃತಾರ್ಥರಾಗಿಯೆ
ಮರಳಿ ಭೂಪನ ಕಾಂಬೆವೈಸಲೆ ಜಾಣನಹೆಯೆಂದ ೩೮

ಬಿಡುವೆಯಾದರೆ ನೃಪನ ಸೆರೆಯನು
ಬಿಡಿಸುವೆನು ಮೇಣಲ್ಲದಿರ್ದೊಡೆ
ಬಿಡಿಸುವೆನು ನಿನ್ನುಸುರ ಸೆರೆಯನು ನಿನ್ನ ದೇಹದಲಿ
ನುಡಿಗೆ ತೆರಹಿಲ್ಲೇಳೆನುತ ಕೈ
ಗಡಿಯಲೆಚ್ಚನು ಕಾಲ ಕೂಟದ
ಕಡಲ ಕವಿವಂದದಲಿ ಕವಿದವು ಪಾರ್ಥನಂಬುಗಳು ೩೯

ಕಡಿದನರ್ಜುನನಂಬನೀಸವ
ಗಡವಿದೇಕೈ ಮರುಳೆ ಕೆಂಡವ
ಮಡುಲೊಳಿಕ್ಕುವುದರ್ಥಿಯೇ ಸಂಧಾನ ನಿಮಗೆಮಗೆ
ಬಿಡುವೆನಿನಿಬರ ಸೆರೆಗಳನು ನಿ
ನ್ನೊಡನೆಯನಲ್ಲಿಗೆ ಕೊಂಡು ನಡೆಯೆಂ
ದೊಡನೆ ಬಂದನು ಧರ್ಮರಾಯನ ಬಳಿಗೆ ಖಚರೇಂದ್ರ ೪೦

ಸೋಲವೆಮ್ಮದು ನಿಮ್ಮ ತಮ್ಮನೆ
ಮೇಲುಗೈ ನಿಮ್ಮಡಿಗಳಾಜ್ಞಾ
ಪಾಲಕರು ಭೀಮಾರ್ಜುನರು ಮಾದ್ರೀಕುಮಾರಕರು
ಕಾಳಗದೊಳೆಮ್ಮಖಿಳ ಖಚರರ
ಧೂಳಿಪಟ ಮಾಡಿದನು ಲಕ್ಷ್ಮೀ
ಲೋಲ ನಿಮಗೊಲಿದಿಹನು ಗದುಗಿನ ವೀರ ನಾರಯಣ ೪೧

ಇಪ್ಪತ್ತೊಂದನೆಯ ಸಂಧಿ

ಸೂ. ಕಳುಹಿದನು ಯಮಸೂನು ವಂಶ
ಪ್ರಳಯನನು ಪ್ರಾಯೋಪವೇಶವ
ತಿಳುಹಿ ದೈತ್ಯರು ಸಂತವಿಟ್ಟರು ಕೌರವೇಶ್ವರನ

ಕೇಳು ಜನಮೇಜಯ ಧರಿತ್ರೀ
ಪಾಲ ಕೌರವ ನೃಪನ ತಂದು ಕೃ
ಪಾಳುವಿನ ಚರಣಾಗ್ರದಲಿ ಕೆಡಹಿದನು ಕಲಿಪಾರ್ಥ
ತೋಳ ಹಿಂಗಟ್ಟುಗಳ ಮೋರೆಯ
ಕಾಳಿಕೆಯ ಬಿಡುದಲೆಯ ನೀರೊರೆ
ವಾಲಿಗಳ ಕುರುಭೂಪನಿದ್ದನು ತಮ್ಮದಿರು ಸಹಿತ ೧

ಕೊಳ್ಳಿ ಸೆರೆಯನು ನಿಮ್ಮ ಸಹಭವ
ರೆಲ್ಲರೂ ಕಡುಮೂರ್ಖರಿದು ನಿ
ಮ್ಮೆಲ್ಲರಿಗೆ ಮತವೈಸಲೇ ನಾವೆಂದು ಫಲವೇನು
ಖುಲ್ಲರಿವದಿರ ಬಿಡಿಸಿದೊಡೆ ತಳು
ವಿಲ್ಲದಹುದಪಘಾತ ಸಾಕಿ
ನ್ನೆಲ್ಲಿಯದು ನಯ ಬೀಳುಗೊಡಿ ನೀವೆಂದನಾ ಖಚರ ೨

ಮಾನಭಂಗವೆ ಬರಲಿ ಮೇಣಭಿ
ಮಾನವಾಲಿಂಗಿಸಲಿ ಚರಣದೊ
ಳಾನತರ ಪಾಲಿಸುವುದೇ ಕ್ಷತ್ರಿಯರ ಧರ್ಮವಿದು
ನೀನೆಮಗೆ ಬಾಂಧವನೆನುತ ಸ
ನ್ಮಾನದಲಿ ಕಳುಹಿದನು ಬಳಿಕು
ದ್ಯಾನದಲಿ ದೇವೇಂದ್ರನೆತ್ತಿದನಳಿದ ಖೇಚರರ ೩

ಕಳುಹಿದನು ಖೇಚರನನವನಿಪ
ತಿಲಕ ನೋಡಿದನೀತನನು ನಿಜ
ಲಲನೆಯನು ಕರೆದನು ಸುಯೋಧನ ನೊಂದನಕಟೆನುತ
ನಳಿನಮುಖಿ ಹೆಡಗೈಯ ಬಿಡುಕಲು
ನೆಲನು ಹಾಸಿಕೆ ಹಂಸತಲ್ಪದ
ಪಳಿಕಿನಲಿ ಪವಡಿಸುವಗೀ ವಿಧಿಯೇ ಶಿವಾಯೆಂದ ೪

ಬಂದಳಬುಜಾನನೆ ಸುಯೋಧನ
ನಂದವನು ನೋಡಿದಳು ಸುಯ್ದಳು
ಬೆಂದ ವಿಧಿ ಬಂಧನವ ತಂದುದೆ ಸಾರ್ವಭೌಮರಿಗೆ
ಒಂದು ಕೈ ಗಲ್ಲದಲಿ ಬಿಡಿಸಿದ
ಳೊಂದು ಕೈಯಲಿ ಭುಜದ ಪಾಶವ
ನಿಂದುಮುಖಿ ದುರಿಯೋಧನನ ದುಶ್ಶಾಸನನು ಸಹಿತ ೫

ಕೆಳದಿಯರ ಕೈಯಿಂದ ಕೊಯ್ಸಿದ
ಳುಳಿದ ಕೌರವನನುಜ ವರ್ಗದ
ಬಲು ಹುರಿಯ ನೇಣುಗಳನವದಿರ ಗೋಣುಗಳು ಮಣಿಯೆ
ಅಳಲಿಸಿದನೇ ಖಚರನಾತನ
ಕೊಲಿಸಬೇಹುದು ಕಳುಹಿ ಕಷ್ಟವ
ಬಳಸಿದಿರಿ ಭೂಪಾಲಯೆಂದಳು ನಳಿನಮುಖಿ ನಗುತ ೬

ಅರಸ ನೊಂದ್ಯೆ ಮರ್ದನಕೆ ಮ
ಲ್ಲರುಗಳಿಲ್ಲೆಮಗೊತ್ತುವವು ಕಲು
ಹರಳು ಮಜ್ಜನ ಭೋಗಿಸುವರೆ ಸಿತಾಂಬು ತಿಳಿಗೊಳನು
ಹರಿಣ ಶಾರ್ದೂಲಾದಿ ಚರ್ಮಾಂ
ಬರವೆ ಸಮಂಕಟ್ಟೆಮಗೆ ರತ್ನಾ
ಭರಣವೇ ರುದ್ರಾಕ್ಷಿಯೆಂದಳು ನಗುತ ತರಳಾಕ್ಷಿ ೭

ವಾರುವವು ವಟಶಾಖೆ ಗಿರಿಗಳು
ತೋರ ಕರಿಗಳು ಭದ್ರಗಜ ವನ
ಭೂರುಹದ ನೆಳಲೆಮಗೆ ಸತ್ತಿಗೆ ಪಲ್ಲವವ್ರಾತ
ಚಾರು ಚಾಮರ ಕಿರುಮೊರಡಿ ವಿ
ಸ್ತಾರ ಪೀಠವು ಹಂತಿಗಾರರು
ಭೂರಿ ಸರ್ಪಾವಳಿಗಳರಮನೆ ಹೊದರು ಹೊಸ ಮೆಳೆಯು ೮

ಈ ವಿಪತ್ತಿನ ನಿಮ್ಮಡಿಯ ಸಂ
ಭಾವಿಸುವರೆಮಗಾದ ವಸ್ತುಗ
ಳೀ ವಿಧಿಗಳೇಕೆಮ್ಮ ಬಾಳಿಕೆಯೆಂದು ದುಗುಡದಲಿ
ದೇವನಿರ್ಪನು ಧರ್ಮಸುತನಿ
ನ್ನಾವುದುಚಿತಾನುಚಿತವೆಂಬುದ
ಭಾವನವರೇ ಬಲ್ಲಿರೆಂದಳು ದ್ರೌಪದಾದೇವಿ ೯

ಮಾನಿನಿಯ ಕಟಕಿಯ ಮಹಾಸ್ತ್ರಕೆ
ಮೌನವನು ಮರೆಗೊಂಡು ಕಲುಷ
ಧ್ಯಾನನಿದ್ದನು ಚಿತ್ತದಲಿ ಬೇರೊಂದ ಚಿಂತಿಸುತ
ಭಾನುಮತಿ ಕೈಮುಗಿದಳೀ ಕ
ರ್ಣಾನುಗತ ತಾಟಂಕ ಮುದ್ರೆಯ
ನೀನೆಲೈ ದಯಗೈದೆಯೆಂದೆರಗಿದಳು ಚರಣದಲಿ ೧೦

ಎತ್ತಿದನು ರಾಣಿಯನು ನೃಪ ತಲೆ
ಗುತ್ತಲೇಕೈ ನಿನಗೆ ಬಂದಾ
ಪತ್ತು ನಮ್ಮದು ನಮ್ಮ ತೊಡಕಿನ ತೋಟಿಗಳು ನಿನಗೆ
ಹೆತ್ತ ತಾಯ್ ಗಾಂಧಾರಿ ಸತಿ ನಾ
ವಿತ್ತಡಿಗಳಕಟಕಟ ನೀ ದು
ಶ್ಚಿತ್ತನಾಗದಿರೆಂದು ನುಡಿದನು ನೃಪತಿ ಕೌರವಗೆ ೧೧

ದ್ರೋಣರೆಂದುಂದ ಮಾಡೆ ಭೀಷ್ಮನ
ವಾಣಿ ವಿಷವೈ ನಿನಗೆ ವಿದುರನು
ರಾಣಿಕವ ನಿನ್ನಲ್ಲಿ ಬಲ್ಲನೆ ಬಗೆಯೆ ನೀನಿವರ
ಪ್ರಾಣ ವಾಯುಗಳವರು ಸುಭಟ
ಶ್ರೇಣಿ ದೇಹಕೆ ನಿನ್ನ ತನು ನಿ
ತ್ರಾಣವದರಿಂದಾಯ್ತು ಪರಿಭವವೆಂದನಾ ಭೂಪ ೧೨

ಬಿಡಿಸಿದಧರದ್ವಯ ವಿಷಾದದ
ತಡಿಯ ಚಿತ್ತದ ನೆಯ್ಗೆ ಬೇರೊಂ
ದೆಡೆಯಲಿದ್ದುದು ಬೀಳುಕೊಂಡನು ಧರ್ಮನಂದನನ
ಒಡನೆ ಬಂದರು ರಾಣಿಯರು ಕೈ
ಗುಡಿಯುವರ ಸುದ್ದಿಯಲಿ ಸೂಸಿದ
ಪಡೆಯು ನಿಮಿಷಕೆ ನೆರೆದುದಿನಸುತ ಸೌಬಲರು ಸಹಿತ ೧೩

ಭಟರ ಬೊಬ್ಬೆಗಳಡಗಿದವು ಬಾ
ಯ್ದುಟಿಗಳಾಡವು ವಂದಿ ನಿಕರಕೆ
ಪಟಹ ಪಣವ ಮೃದಂಗವಿದ್ದವು ವ[illegible]ದೀಕ್ಷೆಯಲಿ
ಚಟುಲ ಗಜ ಹಯ ರಥದವರು ಲಟ
ಕಟಿಸದಿದ್ದರು ಕೌರವೇಂದ್ರನ
ಕಟಕ ದುಮ್ಮಾನದಲಿ ಬಂದುದು ಹಸ್ತಿನಾಪುರಕೆ ೧೪

ಹೊಗಲಿ ಪಾಳೆಯ ಪುರವನೆಂದು
ಬ್ಬೆಗದ ಬೆಳೆ ಸಿರಿವಂತನೆತ್ತಿದ
ದುಗುಡದಲಿ ಕುಳ್ಳಿರ್ದನಾ ಸುರನದಿಯ ತೀರದಲಿ
ಹೊಗೆವ ಮೋರೆಯ ನೆಲಕೆ ನೆಟ್ಟಾ
ಲಿಗಳ ನಿಖಿಳೇಂದ್ರಿಯದ ರೋಚಕ
ಬಿಗಿಯೆ ಬೇಗೆಯ ಬೇಸರಿನ ಬಿಸುಗುಂದಿಯ ಸುಯ್ಲಿನಲಿ ೧೫

ತರಿಸಿ ಗಂಗಾಜಲವ ಗೋಮಯ
ವೆರಸಿ ಕುಶೆ ಸಮ್ಮಾರ್ಜನೆಯ ವಿ
ಸ್ತರಿಸಿ ಪರಿಕರ ಶುದ್ಧಿಯಲಿ ಪಸರಿಸಿದ ಬರ್ಹಿಯಲಿ
ನಿರಶನವ್ರತವೆಂದು ಮಂತ್ರೋ
ಚ್ಚರಿತ ಸಂಕಲ್ಪದಲಿ ಕೌರವ
ರರಸ ಪವಡಿಸಿದನು ಕೃತಪ್ರಾಯೋಪವೇಶದಲಿ ೧೬

ಹೊಗಿಸಬೇಡಾರುವನು ಕರ್ಣಾ
ದಿಗಳು ಮೊದಲಾಗೆಂದು ದಡ್ಡಿಯ
ನುಗುಳುಗಂಡಿಯ ಕಾಹ ಕೊಟ್ಟನು ತನ್ನ ಬೇಹವರ
ದುಗುಡದಲಿ ಪರಿವಾರ ಬಂದೋ
ಲಗಿಸಿ ಹೊರಗೇ ಹೋಗುತಿರ್ದುದು
ನಗುತ ಹೊಕ್ಕಳು ಭಾನುಮತಿ ಕಂಚುಕಿಯನೊಡೆ ನೂಕಿ ೧೭

ಏನು ದಿಟ ಸಂಕಲ್ಪವಿನಿತಕೆ
ನಾನು ಹೊರಗೇ ಹೋಗುವವೇಳು ಕೃ
ಶಾನುವನು ಬೀಳುವೆವು ನಡೆ ಭಾಗೀರಥೀ ಮಡುವ
ಮಾನನಿಧಿಯೇ ವಿವಿಧ ಗರಳ ವಿ
ತಾನವನು ತರಿಸುವೆನು ನಿಶ್ಚಯ
ವೇನು ನಿರಶನ ಮರಣವೇಕೆಂದಳು ಸರೋಜಮುಖಿ ೧೮

ತರುಣಿ ನೀ ಹೆಸರಿಸಿದವಿವು ದು
ರ್ಮರಣ ಸಾಧನವಮಲ ದರ್ಭಾ
ಸ್ತರಣವಿದು ಪಾವನವಲಾ ಪ್ರಾಯೋಪವೇಶದಲಿ
ಪರಿಹರಿಸುವೆನು ದೇಹವನು ಸುಡ
ಲರಸುತನವನು ಪಾಂಡುಪುತ್ರರ
ಕರುಣ ಕಲುಷಿತ ಕಾಯವಿದ ನಾ ಧರಿಸುವೆನೆಯೆಂದ ೧೯

ಈ ನಿರಾಹಾರವು ನಿರರ್ಥಕ
ವೇನನೆಂಬೆನು ಜೀಯ ಮುರಿದಭಿ
ಮಾನ ಬೆಸುವುದೆ ಬಣ್ಣವಳಿವುದೆ ಬಂದ ದುರಿಯಶದ
ಆ ನದೀಸುತ ವಿದುರರೆಂದುದ
ನೀನುಪೇಕ್ಷಿಸಿ ಕಳೆವೆ ಹೆಂಗಸು
ನೀನರಿಯೆಯೆನಬೇಡ ಚಿತ್ತೈಸೊಂದು ಬಿನ್ನಪವ ೨೦

ತಮ್ಮ ನೆರೆ ದಟ್ಟೈಸಿ ರಣದಲಿ
ನಮ್ಮ ಬಿಡಿಸಿದರವರು ನೀವಿ
ನ್ನೆಮ್ಮ ಹಿಂದಣ ಹಳಿವ ನೋಡಿವರೆಂದು ಯಮಸುತನ
ನಮ್ಮ ನಗರಿಗೆ ಕರೆಸಿ ಧರೆಯನು
ತಮ್ಮ ಪಟ್ಟಣ ಸಹಿತ ಕೊಟ್ಟರೆ
ನಿಮ್ಮನೀಗಲು ಲೋಕ ಮೆಚ್ಚುವುದೆಂದಳಿಂದುಮುಖಿ ೨೧

ಕರೆಸಿದರೆ ದಿಟ ಬಾರರವರಾ
ಧರಣಿಯನು ಕೈಕೊಂಡು ನಿಲುವರು
ವರುಷ ಹದಿಮೂರಾದಡಲ್ಲದೆ ಮೆಟ್ಟರೀ ನೆಲವ
ಅರಿಗಳುಪಟಳದಿಂದ ತಪ್ಪಿಸಿ
ಮರಳಿಚಿದ ಜೀವೋಪಕಾರಕೆ
ಕುರುಕುಲಾಗ್ರಣಿ ಲೇಸು ಮಾಡಿದನೆಂಬುದೀ ಲೋಕ ೨೨

ನುಡಿದವಧಿ ಹದಿಮೂರು ವರುಷದ
ಹೆಡತಲೆಯನೊದೆದೆದ್ದು ನಮ್ಮಾ
ಪ್ರೊಡವಿಯರ್ಧಕೆ ಬಲೆಯ ಬೀಸದೆ ಬಿಡುವರೇ ಬಳಿಕ
ನುಡಿಯ ಸಲಿಸದ ಮುನ್ನ ನೀ ಕೊ
ಟ್ಟೊಡೆ ಕೃತಘ್ನತೆ ತಪ್ಪುವುದು ಮಿಗೆ
ನುಡಿಯಲಮ್ಮೆನು ರಾಜಕಾರ್ಯವನೆಂದಳಿಂದುಮುಖಿ ೨೩

ಮರೆವ ಹಗೆಯೇ ನಾವು ಮಾಡಿದ
ನರಿಯೆಲಾ ಮೂದಲಿಸಿ ಮರ್ಮವ
ನಿರಿವ ನುರಗಿ ಕಣಾ ಸದಾ ಪಾಂಚಾಲೆ ಪವನಜರು
ಮರುಗಲೇತಕೆ ಭಾನುಮತಿ ನಿ
ನ್ನಿರುವ ಮಗನಲಿ ರಾಜ್ಯಭಾರವ
ಹೊರಿಸಿ ಬದುಕುವುದೆನ್ನ ಕಾಡದೆ ಹೋಗು ನೀನೆಂದ ೨೪

ಸಾಕು ಸಾಕೀ ಮಾತಿನಲಿ ನಮ
ಗೇಕೆ ರಾಜ್ಯದ ಪಟ್ಟವಾಯ್ತು ವಿ
ವೇಕಿಗಳಿಗಧಿದೈವವೇ ತಾನೀಸು ಹಿರಿದಲ್ಲ
ಮೂಕ ಭಾವದ ದೀಕ್ಷೆ ತನಗೆಂ
ದಾ ಕಮಲಮುಖಿಯಿದ್ದಳಿತ್ತಲು
ನೂಕಿದವು ದಂಡಿಗೆಗಳರಮನೆಯಿಂದ ನಂದಣೆಸಿ ೨೫

ಬಂದಳಾ ಗಾಂಧಾರಿ ಸೊಸೆಯರ
ವೃಂದ ಸಹಿತುರವಣಿಸಿ ಹೊಕ್ಕಳು
ನಿಂದು ನೋಡಿದಳಾತನಿರವನು ಕುತ್ತು ಪಕ್ಕೆಯಲಿ
ಕಂಡಳು ಕಡು ಶೋಕ [illegible]
[illegible] ಮಗನೆ ಹಾಕೆ
ಯಿಂದ ಲೇಸಾಯ್ತೆನುತ [illegible]ದಳು ಸಮಿಾಪದಲಿ ೨೬

ಏನು ದರ್ಭಾಸ್ತರಣ ಶಯನವಿ
ದೇನು ಕಾರಣ ನಿರಶನವ್ರತ
ವೇನು ಸಾಧಿಸಲಾದುದೀ ಪ್ರಾಯೋಪವೇಶದಲಿ
ಏನು ಸಿದ್ಧಿಯಿದಕ್ಕೆ ಮೋಹಿದ
ಮೌನ ಮುದ್ರೆಯ ಬಿಸುಟು ಹೇಳೆ
ನ್ನಾಣೆಯೆನುತವೆ ಹಣೆಯ ಹಣೆಯಲಿ ಚಾಚಿದಳು ಮಗನ ೨೭

ತಾಯೆ ಹೇಳುವುದೇನು ಪಾಂಡವ
ರಾಯರುಳುಹಿದ ವೊಡಲನಿದನಿದ
ರಾಯಸವ ನಾ ಹೇಳಲರಿಯೆನು ಹೊರಗೆ ಕೇಳುವುದು
ನೇಯಲೇತಕೆ ನಿಮಗೆ ಮಕ್ಕಳು
ತಾಯೆ ನೂರುಂಟನಿಬರಲಿ ಕುಂ
ದಾಯಿತೊಂದೈ ಸಲೆ ಮನೋವ್ಯಥೆಯೇಕೆ ನಿಮಗೆಂದ ೨೮

ಮಾಡಿದೆನು ಸಂಕಲ್ಪವಿದರೊಳು
ಗೂಡ ಕಳಚುವೆನೊಮ್ಮೆ ನೀವೇ
ನೋಡಿ ಸಂತಸ ಪಡುವುದಾ ದುಶ್ಶಾಸನಾದಿಗಳ
ಕೇಡಿಗನು ಕುರುವಂಶಕೆಂದಿಳೆ
ಯಾಡುವುದು ತನ್ನೊಬ್ಬನನು ನಾ
ಮೂಡಿದೆನು ನೆರೆ ಮುಳುಗಿದೊಡೆ ಕುಲಕೆಲ್ಲ ಲೇಸೆಂದ ೨೯

ಉಸುರು ಬೀಯದ ಮುನ್ನ ರಾಜ್ಯವ
ನೊಸೆದು ಕೊಟ್ಟೆನು ಪಟ್ಟ ಬಂಧನ
ದೊಸಗೆಯಲಿ ಕೌತುಕವನೀ ಕಿವಿಯಾರೆ ಕೇಳುವೆನು
ಅಸುವನಳುಕದೆ ಬಿಡುವೆನೌ ಶಂ
ಕಿಸದೆ ದುಶ್ಶಾಸನಗೆ ಪಟ್ಟವ
ನೆಸಗಿ ನಡೆಯೌ ತಾಯೆ ಬಿಜಯಂಗೈಯಿ ನೀವೆಂದ ೩೦

ಆ ಸಮಯದಲಿ ವಿಗತ ನಯನ ಮ
ಹೀಶ ಬಂದನು ಜನಪದದ ವಿ
ನ್ಯಾಸಮುಗ್ಗಡಣೆಯಲಿ ವಿದುರನ ಹೆಗಲ ತೋಳಿನಲಿ
ಆಸರಿನ ಬೇಗುದಿಯ ಬೆಂಕಿಯ
ಬೇಸರಿನ ಬಿಸುಸುಯ್ಯ ರಾಣೀ
ವಾಸ ಕುಲವಿದಿರೆದ್ದುದಖಿಳಾಭರಣ ರಭಸದಲಿ ೩೧

ಸಂತವಿಡಿರೇ ಮಗನ ನಿಜ ದೇ
ಹಾಂತ ಕೃತ ಸಂಕಲ್ಪ ಗಡ ನೃಪ
ನಂತರಂಗವ ಕರೆಸಿಯೆಂದಳಲಿದಳು ಗಾಂಧಾರಿ
ಭ್ರಾಂತಿ ಬಿಗಿದಿದೆ ಚದುರ ಚಿತ್ತಕೆ
ಚಿಂತೆ ಬೇರೊಂದಾಯ್ತು ರಾಯನ
ಹಂತಿಕಾರರು ಬರಲಿ ಹಿಡಿಯಲಿ ನಿರಶನ ವ್ರತವ ೩೨

ಸಾಕು ಮಗನೆ ದುರಂತ ಚಿಂತೆಯಿ
ದೇಕೆ ಸಂಕಲ್ಪಾಭಿಯೋಗ
ವ್ಯಾಕುಲತೆ ಬೇಡೇಳು ಪಾಲಿಸು ಸಕಲ ಭೂತಳವ
ಆ ಕುಮಾರರ ಕರೆಸಿ ಗುಣದಲಿ
ಸಾಕುವುದು ಜೀವೋಪಕಾರಕೆ
ಕಾಕ ನೆನೆಯದಿರೆನುತ ಮುಂಡಾಡಿದನು ನಂದನನ ೩೩

ಸವೆದು ಹೋಯ್ತಾಯುಷ್ಯ ತನಗಿ
ನ್ನವನಿಯಾಗಮು ಮರೆ ಯುಧಿಷ್ಠಿರ
ಪವನಜರು ನಿನಗನ್ಯರೇ ಕರೆಸುವುದು ರಾಜ್ಯದಲಿ
ಅವರುಗಳ ನಿಲಿಸುವುದು ನೆಲದ
ರ್ಧವನು ದುಶ್ಶಾಸನಗೆ ಕೊಡುವುದು
ನಿಮಗೆ ಚಿತ್ತಕೆ ಬಹರೆಯೆಂದನು ತಂದೆಗವನೀಶ ೩೪

ಆದರವರಂತಿರಲಿ ನಿನಗಿ
ನ್ನೀ ದುರಾಗ್ರಹ ಬೇಡ ನಿನಗಳಿ
ವಾದೊಡೀ ಕುರುವಂಶವಳಿವುದು ಪಟ್ಟವಾವನಲಿ
ಬೀದಿಗಲಹದೊಳೊಮ್ಮೆ ಪೈಸರ
ವಾದಡದು ಪರಿಹರಿಸಿದವರೇ
ಸೋದರರರಲಾ ಹೆಚ್ಚು ಕುಂದೇನೆಂದನಂಧನೃಪ ೩೫

ಕಲಹ ಬೀದಿಯೊಳಾಯ್ತು ಕಟ್ಟಿದ
ರಳಿ ವಿನೋದದಲಹಿತರದ ಹೊ
ಯ್ದಳಿದು ತಂದನು ಪಾರ್ಥನೆಮ್ಮಯ ತೋಳ ನೇಣುಗಳ
ನಳಿನಮುಖಿ ಕಡು ಮೌಳಿಯಲಿ ಮೂ
ದಲಿಸಿ ಕೊಯ್ದಳು ತನಗೆ ಭಂಗದ
ಲುಳಿವುದೆತ್ತಣ ಮಾತು ಕರುಣಿಸು ಬೊಪ್ಪ ನೀವೆಂದ ೩೬

ದೋಷ ನಿಮಗಿಲ್ಲೆನ್ನ ಮೇಲಭಿ
ಲಾಷೆಯನು ಬಿಡಿ ನಿಮ್ಮ ಮಗ ಕುಲ
ಭೂಷಣನಲಾ ಧರ್ಮಸುತನಾತನಲಿ ಹುರುಡಿಸುವ
ರೋಷವುಂಟೇ ತನಗೆ ನಿಮಗಿದು
ದೂಷಣವೆ ತಾನಲ್ಲ ನಾನಾ
ಘೋಷಿಸುವೆನ್ಯೆ ಪಾಂಡು ಸುತರರಸಾಗಬೇಕೆಂದು ೩೭

ಸಾರವೀ ನುಡಿ ಕಟಕಿಯಲ್ಲ ವಿ
ಚಾರಪರರಿಗೆ ನಿಮ್ಮ ಚಿತ್ತಕೆ
ಬಾರದಿದ್ದರೆ ನಿಲಲಿ ದುಶ್ಶಾಸನನ ಕರೆಸುವುದು
ಸೇರಿಸುವುದವನಿಯನು ಮೇಣಿದು
ಭಾರವೇ ನಿಮ್ಮರಮನೆಗೆ ವಿ
ಸ್ತಾರದಿಂದವೆ ಬಿಜಯ ಮಾಡೆನುತತ್ತ ಮುಂದಾದ ೩೮

ಮುನಿಸಿನಲಿ ಧೃತರಾಷ್ಟ್ರ ತನ್ನರ
ಮನೆಗೆ ತಿರುಗಿದನಿತ್ತ ನಾರೀ
ಜನವನೆಲ್ಲವ ಬೀಳುಕೊಟ್ಟನು ಬೈದು ಖಾತಿಯಲಿ
ಮನಕತದಿ ಕಾತರಿಸಿ ಗಂಗಾ
ತನುಜ ರವಿಜ ದ್ರೋಣ ಗೌತಮ
ರನುಚಿತ ಪ್ರಾರಂಭಭೀತರು ಬಂದರೊಗ್ಗಿನಲಿ ೩೯

ರಾಯನಿಹ ಹದನೇನು ನಿದ್ರಾ
ನಾಯಿಕೆಯು ಮೇಳವದಲ್ಲೆದನೆ
ಜೀಯಯೆನಲೊಳಹೊಕ್ಕು ನಿಂದರು ನೃಪಸಮೀಪದಲಿ
ಆಯಿತೇ ನಾವೆಂದ ನುಡಿಯಿದು
ಹೋಯಿತನಶನದಿಂದ ದೇಹದ
ಬೀಯದಲಿ ಸಂಕಲ್ಪ ಗಡ ಹೇಳೆಂದನಾ ಭೀಷ್ಮ ೪೦

ಈಸು ದಿನ ಸಾಮ್ರಾಜ್ಯ ಸೌಖ್ಯ ವಿ
ಲಾಸದಲಿ ಬಳಸಿದೆನು ಸಾಕಿ
ನ್ನೀ ಶರೀರವ ನೂಕಿ ನಿಲುವೆನು ಮುಕ್ತಿ ರಾಜ್ಯದಲಿ
ಆಸೆಯವನಿಯೊಳಿಲ್ಲ ವಿಷಯಾ
ಭ್ಯಾಸಿಗೊಮ್ಮೆ ವಿರಕ್ತಿ ದೆಸೆಯಹು
ದೈಸಲೇ ಗುರು ನೀವು ಬೆಸಸುವುದೆಂದನಾ ಭೂಪ ೪೧

ಕೇಳಿದೆವು ಹಿಂದಾದ ಖೇಚರ
ರೊಳಿಗವನಡಹಾಯ್ದು ನಿಮ್ಮವ
ನೋಲಯಿಸಿದಂದವನು ನಿನಗದರಿಂದ ಪರಿಭವವ
ತಾಳದಂತಿರಲವರ ಕರೆಸುವೆ
ವೇಳು ಭೀಮಾರ್ಜುನರ ನಿನಗಿ
ನ್ನಾಳು ಕೆಲಸದೊಳಿರಿಸಿ ನಡೆಸುವೆನೆಂದನಾ ಭೀಷ್ಮ ೪೨

ಮೊದಲು ಧೃತರಾಷ್ಟ್ರಂಗೆ ತಾ ಜನಿ
ಸಿದುದು ಬಳಿಕೀ ದೇಹ ಧರ್ಮಜ
ನುದರದಿಂದವೆ ಬಂದುದಿನ್ನವರೊಡನೆ ಮತ್ಸರವೆ
ಅದು ನಿಲಲಿ ದುರ್ವಿಷಯ ವೈರಾ
ಗ್ಯದಲಿ ದೇಹವ ಬಿಡುವೆನಲ್ಲದೆ
ಬೆದರು ಭಂಗದೊಳಿಲ್ಲ ಬಿಜಯಂಗೈಯಿ ನೀವೆಂದ ೪೩

ನಾವು ಪಡಿಬಾಹಿರರು ಬೀಯದ
ಸೇವಕರು ಸಮಹಂತಿಗಾರರಿ
ಗೀವುದೈದೃಢಮುದ್ರಿತಾಂತರ್ಮಾನಸಾಮೃತವ
ಭೂವಧುವ ಬೋಳೈಸು ಕಾನನ
ಜೀವಿಗಳು ತವ್ಮೊಲಿದುದಾಗಲಿ
ಸಾವುದನುಚಿತವೆಂದು ನುಡಿದರು ಭೀಷ್ಮ ಗುರು ಕೃಪರು ೪೪

ಎಮ್ಮ ನುಡಿಗಳಪಥ್ಯವಾದರೆ
ನಿಮ್ಮ ಕರ್ಣಾದಿಗಳ ಕರೆಸುವು
ದೆಮ್ಮ ನುಡಿಗವರೆಂದ ಮಾತನುಸಾರಿಯೆನಿಸಿದರೆ
ಒಮ್ಮೆ ಕೈಕೊಂಬುದು ವೃಥಾ ನೃಪ
ಧರ್ಮವನು ಬಿಡಬೇಡ ಸಮರವ
ನೆಮ್ಮಿ ಸಾವುದು ಗುಣವು ಗರುವರಿಗೆಂದನಾ ಭೀಷ್ಮ ೪೫

ಕದನವಾರಲಿ ಪಾಂಡು ಸುತರಲಿ
ಕದಡ ಮಾಡುವುದುಚಿತವೇ ನಮ
ಗಿದಿರು ಬಳಿಕಾರುಂಟು ಭಾರತ ವರುಷ ಸೀಮೆಯಲಿ
ಇದನರಿತು ಸಂಕಲ್ಪ ಭಂಗಾ
ಸ್ಪದವ ಮಾಡುವುದೊಳ್ಳಿತೇ ನಿಜ
ಸದನಕಭಿಮುಖರಾಗಿ ಕರುಣಿಪುದೆಂದನಾ ಭೂಪ ೪೬

ಐಸಲೇ ದೈವೋಪಹತ ಮನ
ದಾಸರಾರಿಂದಡಗುವುದು ನಾ
ವೇಸನೊರಲಿದಡಾಗದವರೇ ಬಂದು ನಿಲಿಸುವರು
ಈಸರಲಿ ಮರಳುವೆವೆನುತ ನಿಜ
ವಾಸಕ್ಕೆದಿದರಿತ್ತ ಮೋಹಿದ
ವಾ ಶಕುನಿ ಕರ್ಣಾದಿಗಳ ದಂಡಿಗೆಗಳೊಗ್ಗಿನಲಿ ೪೭

ಹೊಕ್ಕು ರಾಯನ ಕಂಡಿದೇನೀ
ಹಕ್ಕೆ ಹುಲ್ಲಿನಲಿರವು ಹರ ಹರ
ಮಕ್ಕಳಾಟಿಕೆಯಾವುವಗ್ಗದ ಸಾರ್ವಭೌಮರಿಗೆ
ಸಿಕ್ಕುವನು ಹಗೆ ತನಗೆ ತಾನೇ
ಸಿಕ್ಕುವನು ಹಗೆಗಳಿಗೆ ಲೋಕದೊ
ಳಕ್ಕಜವೆ ಜಯ ವಿಜಯವೆಂದರು ಕರ್ಣ ಶಕುನಿಗಳು ೪೮

ಹರಿಬ ಬೇಕೇ ಮತ್ತೆ ಗಂಧ
ರ್ವರಿಗೆ ದೂತರನಟ್ಟು ಭೀಮನ
ಸರನೊಳನುಸಂಧಾನವೇ ನಾಲ್ಕೆಂಟು ದಿವಸದಲಿ
ಧರೆಯೊಳವರಿರದಂತೆ ಘಟ್ಟಿಸಿ
ತೆರಳಿಚುವೆವಿದಕಕಟ ದರ್ಭೆಯು
ಪರಿಹಿ ಹಕ್ಕೆಯನಿಕ್ಕಲೇಕೆಂದೊದರಿದರು ಖಳರು ೪೯

ದೂತನಮರರಿಗಟ್ಟುವುದು ತಾ
ಬೂತು ಭೀಮಾರ್ಜುನರ ಕೂಡೆ ವಿ
ಘಾತಿ ಕೈಯೊಡನುಚಿತವೇ ಕೆಡೆನುಡಿವುದೀ ಲೋಕ
ಈ ತನುವನೀ ಪರಿಯಲೇ ನಿ
ರ್ಭೂತವನೆ ಮಾಡುವೆನು ನನ್ನನು
ಜಾತನಲಿ ಭೂವಧುವ ಸೇರಿಸಿ ಬದುಕಿ ನೀವೆಂದ ೫೦

ನಿನ್ನೊಡನೆ ಹುತವಹನ ಹೊಗುವೆವು
ಮನ್ನಣೆಯ ಮಾತಲ್ಲ ನಿನ್ನಿಂ
ಮುನ್ನ ಮುಂಡಿತ ಶಿರದಲೆಸೆವೆವು ತೀರ್ಥಯಾತ್ರೆಯಲಿ
ಎನ್ನಮತ ಸೌಬಲನ ಮತವಿದ
ನಿನು ಕೆಲರಲಿ ಬೆರಸುವುದೆ ಬೇ
ರಿನ್ನು ಮಾತೇಕೆನುತ ಮುರಿದರು ತಮ್ಮ ಮನೆಗಳಿಗೆ ೫೧

ಉಳಿವ ಭಟ್ಟರ ನಿಲಿಸಿದನು ಸಮ
ನೆಲನ ಪೊಗಳುವ ಕಾಪಕರ ಕಳ
ಕಳವ ನಿಧಿಕೊತ್ತಿದನು ಕಹಳಾರವಕೆ ಕೋಪಿಸುತ
ತಲೆ ಮುಸುಕಿನಲಿ ತಾರಿದೊಡಲಿನ
ತಳಿತ ದುಗುಡದ ಮೋರೆಯುಲಿ ಕುರು
ಕುಲಭಯಂಕರನೈದಿದನು ದುಶ್ಶಾಸನನು ನೃಪನ ೫೨

ಹೊಕ್ಕನೊಳಗನು ರಾಯನಂಘ್ರಿಯೊ
ಳೊಕ್ಕನೊಪಲನು ಲೋಚನಾಂಬುಗ
ಳುಕ್ಕಿದವು ಕಳವಳಿಸಿದವು ಕರಣೇಂದ್ರಿಯಾದಿಗಳು
ಬಿಕ್ಕಿದನು ಬಿರಿಬಿರಿದು ಸೆರೆಗಳು
ಮುಕ್ಕುರಿಕಿದವು ಕೊರಳ ಹೃದಯದೊ
ಳೊಕ್ಕಲಿಕ್ಕಿತು ಶೋಕಪಾವಕವಾ ನೃಪಾನುಜನ ೫೩

ಅನುಜನದ್ಭುತ ಶೋಕ ರಸದಲಿ
ಕೊನರುತರಸನ ಮೋಹ ಕುರುಕುಲ
ವನವರಲು ಕುಲ್ವರ್ದನೊಯ್ಯನೆ ಮಾನಿನಿಯು ಮಲಗಿ
ನಿನಗಿದೇನುಚಿತಗೋ ತ
ಸ್ಥಿನ ಪುರದ ಸಾಮ್ರಾಜ್ಯಸಿರಿ ನಿಷ್ಟ
ಜನದಿಗೆ ದುರುದುಳಿ ಹೋಗುವತ್ತಿದನು ಹಗೆಯು ೫೪

ಸೆಳೆದು ಬಿಗಿಯಪ್ಪಿದನು ಲೋಚನ
ಜಲವ ತೊಡೆದನು ಪಾಂಡುಪುತ್ರರು
ಸೆಳೆದು ಕೊಳ್ಳರೆ ನೆಲನನಕಟಾ ಮತ್ಪರೋಕ್ಷದಲಿ
ಕುಲವ ನೀನುದ್ಧರಿಸು ಸೇಸೆಯು
ತಳಿವೆ ನಾ ಮುಂದಿಟ್ಟು ಬರಿದಿ
ನ್ನಳಲದಿರು ಪ್ರಾಯೋಪವೇಶವ ಬಿಡೆನು ನಾನೆಂದ ೫೫

ಅಳಿದರಳಿವೆ ಭವತ್ಪರೋಕ್ಷದೊ
ಳುಳಿವನೇ ನಿನ್ನರಸಿ ಧರೆಗಾ
ನಳುಪುವೆನೆ ನಿನ್ನಳಿವನೀಕ್ಷಿಸಿ ಧೈರ್ಯವೇ ತನಗೆ
ನೆಲನ ಕುಂತಿಯ ಮಕ್ಕಳೇ ಕೈ
ಕೊಳಲಿ ಮಾಣಲಿ ಸಿರಿಗೆ ಸೇಸೆಯ
ತಳಿವರಿಗೆ ತಳಿ ನಿನ್ನ ಬಿಡದಿಹ ಭಾಷೆ ನನಗೆಂದ ೫೬

ಧಾತುಗೆಡಲೇಕೀಸು ಕಾತರೆ
ಬೀತು ಹೋಹುದು ಬೀತ ಮರನೇ
ಕಾತಿಹುದಲ್ಲೆ ಹತ ವಿಧಿಗೆ ವಿಪರೀತ ಕೃತಿ ಸಹಜ
ಆತಗಳು ನಮಗುಪಕರಿಸಿ ವಿ
ಖ್ಯಾತರಾದರು ಮರಳಿ ನಾವಿ
ನ್ನಾತಗಳನಳುಕಿಸುವುಪಾಯವ ಕಂಡೊಡೇನೆಂದ ೫೭

ಮರುಳು ತಮ್ಮ ವೃಥಾ ಖಳಾಡಂ
ಬರವಿದಲ್ಲದೆ ಪಾಂಡುಪುತ್ರರ
ಪರಿಭವಿಸಲೊಡಬಡುವರೇ ವಿದುರಾದಿ ಬಾಹಿರರು
ಅರಮನೆಗೆ ನೀ ಹೋಗು ಹಸ್ತಿನ
ಪುರಕೆ ನೀನರಸಾಗು ಮೋಹದ
ಮರುಳುತನವೀ ಕ್ಷತ್ರಧರ್ಮದೊಳಿಲ್ಲ ಕೇಳೆಂದ ೫೮

ಮಗಗೆ ಮುನಿವನು ತಂದೆ ತಂದೆಗೆ
ಮಗ ಮುನಿವನೊಡಹುಟ್ಟಿದರು ಬಲು
ಪಗೆ ಕಣಾ ತಮ್ಮೊಳಗೆ ಭೂಪರ ಖುಲ್ಲ ವಿದ್ಯವಿದು
ಜಗದ ಪರಿವಿಡಿಯೆಮ್ಮೊಳಲ್ಲದೆ
ಸೊಗಸಿ ರಾಜ್ಯವನಿತ್ತೆ ನಿನಗದು
ಮಗುಚಿದೊಡೆಯೆನ್ನಾಣೆಯೆನುತಪ್ಪಿದನು ಖಳಪತಿಯ ೫೯

ಭ್ರಾಂತಿಯೇಕೆ ಭವತ್ಪರೋಕ್ಷದೊ
ಳಂತಕನ ಪುರವಲ್ಲದುರ್ವೀ
ಕಾಂತೆಗಳುಪಿದೆನಾದರೊಡಹುಟ್ಟಿದೆನೆ ನಿಮ್ಮಡಿಯ
ಸಂತವಿಡುವೀ ಮಾತು ಸಾಕಿ
ನ್ನಂತಿರಲಿ ನಿಮಗೇನು ಹದನಾ
ಯ್ತಂತರದೊಳಾ ಹದನನೀಕ್ಷಿಪೆಯೆನುತ ಹೊರವಂಟ ೬೦

ಧರಣಿಪತಿ ಕೇಳ್ ಬಳಿಕ ಹಸ್ತಿನ
ಪುರದ ನಿಖಿಳ ಶ್ರೇಣಿಕುಲ ನಾ
ಗರಿಕ ಜನ ಪರಿವಾರ ಪಾಡಿ ಪಸಾಯ್ತ ಪೌರಜನ
ಅರಸ ಬಿಯಂಗೈದು ನಮ್ಮನು
ಹೊರೆವುದಲ್ಲದೊಡಾ ವನಾಂತರ
ವರಕೆ ನೇಮವ ಕೊಡುವುದೆಂದೊರಲಿದರು ತಮ ತಮಗೆ ೬೧

ಪರಿಜನದೊಳವರವರ ಮುಖ್ಯರ
ಕರೆಸಿದನು ದುಶ್ಶಾಸನನು ನಿಮು
ಗರಸು ನೃಪ ನೀತಿಯಲಿ ಪಾಲಿಸುವನು ಮಹೀತಳವ
ಧರೆಯನಾಳಿಗೆತ್ತ ವೆಮಗೀ
ಸುರನದೀ ತೀರದಲಿ ಕಾಶೀ
ಶ್ವರನ ಸನ್ನಿಧಿಯಿರವು ಘಟಿಸಿದುದೆಂದನಾ ಭೂಪ ೬೨

ರಾಯನೀ ಪರಿ ನುಡಿದು ಜನ ಸಮು
ದಾಯವನು ಕಳುಹಿದನು ಸುಮನೋ
ಭೂಯ ಸಾಪೇಕ್ಷೆಯ ಸಮಾಧಿಯೊಳಿರಲು ರಾತ್ರಿಯಲಿ
ದಾಯವಿದು ತಮಗೆಂದು ದೈತ್ಯ ನಿ
ಕಾಯ ಬಂದು ರಸಾತಳಕೆ ಕುರು
ರಾಯನನು ಕೊಂಡೊಯ್ದು ತಿಳುಹಿದರವರು ಸಾಮದಲಿ ೬೩

ಅರಸ ನೀ ಪ್ರಾಯೋಪವೇಶದಿ
ಮರಣ ದೀಕ್ಷಿತನಾದೆ ಗಡ ನಿ
ಮ್ಮರಸು ಕುಲಕನುಚಿತವ ನೆನೆದೈ ಕಾಕ ಬಳಸಿದೆಲ
ಸುರರು ಪಾಂಡು ಕುಮಾರರಾಗವ
ತರಿಸಿದರು ನೆಲವವರಿಗೈ ನಾ
ವಿರಲು ಸುಡಲೀ ದೈತ್ಯ ಜನ್ಮವನೆಂದರಾ ಖಳರು ೬೪

ಸಾಯದಿರು ನಿನಗಿಂದು ಮೊದಲು ಸ
ಹಾಯರಾವಾಹವಕೆ ರಿಪು ಕೌಂ
ತೇಯರಿಗೆ ಕೊಡಬೇಡವಿನ್ನು ತಿಲಾಂಶ ಭೂತಳವ
ಲಾಯ ಸಹಿತೀ ಗಜ ರಥಾಶ್ವ ನಿ
ಕಾಯ ನಿನ್ನದು ದೈತ್ಯ ಸಚಿವ ಪ
ಸಾಯತರು ನಿನ್ನವರು ಸಾವೆವು ನಿಮ್ಮ ಸಮರದಲಿ ೬೫

ಮಾನವನು ನಾನಿನ್ನು ನೀವೋ
ದಾನವರು ಗಂಧರ್ವರಿಂದಭಿ
ಮಾನವೆನಗಕ್ಕಾಡಿ ಹೋಯಿತು ಹೇಳಲೇನದನು
ಮಾನಿನಿಯ ಮೂದಲೆಯನಾ ಪವ
ಮಾನಸುತನ ಸಗರ್ವ ವಚನವ
ನೇನ ಹೇಳುವೆನೆನುತ ಸುಯ್ದನು ಕೌರವರ ರಾಯ ೬೬

ನರರು ನೀವ್ ದಾನವರು ನಾವೆಂ
ದಿರದಿರೊಡಹುಟ್ಟಿದರು ನಿಮಗಿ
ನ್ನರಸ ವೇಳಾಯಿತರು ವೆಗ್ಗಳ ದೈತ್ಯ ಭಟರೆಲ್ಲ
ಸುರಪುರದ ಸೂಳೆಯರ ಪಡಿಗವ
ನಿರಿಸುವರು ಗಂಧರ್ವರವದಿರ
ಕರುಳ ತಿಂಬೆವು ನಾವೆನುತ ಗರ್ಜಿಸಿತು ಖಳನಿಕರ ೬೭

ಎಂದ ಭೂಪನ ತಿಳುಹಿ ಕಳುಹಲು
ಬಂದು ಮರಳಿ ಮಹೀತಳಕೆ ತ
ನ್ನಿಂದುವದನೆಯ ಮಾತಿನಲಿ ನಿಂದವನು ತಾನಾಗಿ
ಬಂದನರಮನೆಗಖಿಳ ಜನವಾ
ನಂದ ರಸದಲಿ ಮುಳುಗೆ ಪುರದಲಿ
ಸಂದಣಿಸಿದವು ಗುಡಿಗಳೊಸಗೆಯ ಲಳಿಯ ಲಗ್ಗೆಗಳ ೬೮

ಮತ್ತೆ ನೆಗ್ಗಿತು ನಯವಧರ್ಮದ
ಕುತ್ತುದಲೆ ನೆಗಹಿದುದು ಸತ್ಯದ
ಬಿತ್ತು ಹುರಿದುದು ಪಟ್ಟಗಟ್ಟಿದುದಾ ಕೃತಘ್ನತೆಗೆ
ನೆತ್ತಿಕಣ್ಣಾಯ್ತಧಮತೆಗೆ ನಗೆ
ಯೊತ್ತಿದಾರಡಿ ಸುಜನ ಮಾರ್ಗವ
ಕೆತ್ತುದಟಮಟವೀ ಸುಯೋಧನ ಸೌಮನಸ್ಯದಲಿ ೬೯

ಮರೆದು ಕಳೆದನು ಬಂದ ಲಜ್ಜೆಯ
ಬರನ ದಿನವನು ಮುಂದಣುಪಹತಿ
ಗುರುವ ದೈತ್ಯರ ಮೈತ್ರಿಯನು ನೆನೆನೆನೆದು ಹಿಗ್ಗಿದನು
ಮುರಿದುದಿನ್ನೇನಹಿತ ದರ್ಪದ
ಹೊರಿಗೆಯೆಂದುತ್ಸವದಲವನಿಪ
ಮೆರೆದನಧ್ವರ ಶಾಲೆಯಲಿ ಮಾಡಿದ ಮಹಾಕ್ರತುವ ೭೦

ಕೇಳಿದರು ಪಾಂಡವರು ಕುರು ಭೂ
ಪಾಲಕನ ಸಂಕಲ್ಪವನು ಪಾ
ತಾಳದಲಿ ಸುರವೈರಿ ವರ್ಗದ ಸಖ್ಯ ಸಂಗತಿಯ
ಮೇಲಣಧ್ವರ ಕರ್ಮವನು ನಗು
ತಾಲಿಸಿದರಡಿಗಡಿಗೆ ಲಕ್ಷ್ಮೀ
ಲೋಲನಂಘ್ರಿಯ ನೆನೆವುತಿದ್ದರು ವೀರ ನರಯಣನ ೭೧

ಇಪ್ಪತ್ತೆರಡನೆಯ ಸಂಧಿ

ಸೂ. ರಾಯನರಸಿಯ ಹಿಡಿದೆಳೆವ ರಿಪು
ರಾಯ ದಳವನು ಮುರಿದು ಫಲುಗುಣ
ವಾಯುಜರು ಪರಿಭವಿಸಿ ಬಿಟ್ಟರು ಕಲಿ ಜಯದ್ರಥನ

ಕೇಳು ಜನಮೇಜಯ ಧರಿತ್ರೀ
ಪಾಲ ಲೆಕ್ಕಕೆ ಸಂದುದಟವೀ
ಪಾಳಿ ಪರಿಯಟಣ ಪ್ರಬಂಧಕೆ ವರುಷ ಹನ್ನೊಂದು
ಮೇಲೆ ಮೇಲೌಕುವ ವಿಪತ್ಕ
ಲ್ಲೋಲ ಕೋಳಾಹಲಿತ ಕಲುಷ ಕ
ರಾಳ ಕಾಲಾಂಬುಧಿಯನೀಸಾಡಿದರು ಬೇಸರದೆ ೧

ಸಿಂಧು ದೇಶಕೆ ಬಂದನವನಿಪ
ಬಂಧ ಕೃತಿಯಲಿ ಬಳಿಕ ಬಿಡುಗಡೆ
ಯಂಧಭೂಪತಿಯಳಿಯ ಕೇಳಿದನಾ ಜಯದ್ರಥನು
ಅಂಧತೆಯನೇನೆಂಬೆನೈ ಪ್ರತಿ
ಬಂಧಕರು ಬೇಡೆನಲು ನಯದಭಿ
ಸಂಧಿಯಲಿ ಸೀವರಿಸಿ ಸಂವರಿಸಿದನು ಸೈನಿಕವ ೨

ನೆರಹಿದನು ಹದಿನಾರು ಸಾವಿರ
ಕರಿಘಟೆಯನೈವತ್ತು ಸಾವಿರ
ತುರಗವನು ಹದಿನಾಲ್ಕು ಸಾವಿರ ಕನಕಮಯ ರಥವ
ಚರಣ ಚೌಪಟರೈದು ಲಕ್ಷವ
ಬರಿಸಿದನು ಬಹುವಾದ್ಯ ರವ ದಿ
ಕ್ಕಿರವೊಡೆಯೆ ಸೂಳೈಸೆ ಮೇಳೈಸಿದನು ಮೋಹರವ ೩

ಜೀಯ ಭಾಸ್ಕರ ಭೌಮರಶುಭ
ಸ್ಥಾಯಿಗಳು ಗುರು ಮಂದರಭಿಭವ
ದಾಯಿಗಳು ವಿಪರೀತ ದೆಸೆ ಬುಧ ಶುಕ್ರ ರಾಹುಗಳ
ಯಾಯಿಗಳಿಗಪಜಯ ನಿವಾಸ
ಸ್ಥಾಯಿಗೊಳ್ಳಿತು ಚಿತ್ತವಿಸಿಯೆನೆ
ಜೋಯಿಸರ ಜವಿವಲೆಗೆ ಸಿಲುಕೆನೆನುತ್ತ ಹೊರವಂಟ ೪

ಉರಿ ಹೊಗೆಯ ದಿಕ್ಕಿನಲಿ ಹಕ್ಕಿಗ
ಳೊರಳಿದವು ಗೋಮಾಯು ರವವ
ಬ್ಬರಿಸಿದುದು ದೆಸೆ ದೆಸೆಗಳಲಿ ಸೂಚಿಸಿತು ರಣಭಯವ
ದುರುಳನದ ಕೈಕೊಂಬನೇ ಕುರು
ನರಪತಿಯ ತತ್ಸಂಪ್ರದಾಯದ
ಗರುಡಿಕಾರನಲಾ ಚತುಷ್ಟಯ ದುಷ್ಟಮಂತ್ರಿಗಳ ೫

ಭರದ ಪಯಣದ ಮೇಲೆ ಪಯಣದ
ಲುರವಣಿಸಿ ನಡೆತಂದು ಪಾಂಡವ
ರರಸನಿಹ ವಿಮಲಾಶ್ರಮದ ವಿಪಿನೋಪಕಂಠದಲಿ
ಹರಹಿದವು ಗುಡಿ ಗಜ ಹಯದ ಮಂ
ದಿರ ರಚನೆ ರಹಿಯಾಯ್ತು ಬಿಟ್ಟನು
ಕುರುನೃಪಾಲನ ಮೈದುನನು ಭೂಪಾಲ ಕೇಳೆಂದ ೬

ಏನ ನೆನೆದನೊ ದುಷ್ಟಮಂತ್ರಿ ವಿ
ತಾನ ದೀಕ್ಷಿತ ಕಳುಹಿದನು ಮದ
ನಾನುರಾಗದಲಾಭರಣವನು ಲೇಪನಾದಿಗಳ
ಸಾನುನಯದಲಿ ಪಾಂಡುಪುತ್ರರ
ಮಾನಿನಿಗೆ ಕೊಡಿ ನಿರ್ಜನದೊಳಬು
ಜಾನನೆಯ ಸೇರಿಸುವುದೆಮಗೆಂದಟ್ಟಿದನು ಚರರ ೭

ಬನದೊಳಡಗಿದರವರು ಕುಂತೀ
ತನುಜರೈವರು ಬೇಂಟೆಯಾಡಲು
ನೆನೆದು ಧೌಮ್ಯನನಬುಜಮುಖಿಯಾಶ್ರಮದ ಕಾಹಿನಲಿ
ಮುನಿಜನಂಗಳ ನಿಲಿಸಿ ಕೊಂಡರು
ಧನುವ ಬೆಂಬತ್ತಳಿಕೆಗಳ ನೃಪ
ಜನ ಲಲಾಮರು ಬನಬನದೊಳರಸಿದರು ಮೃಗಕುಲವ ೮

ಹೋದರವರತ್ತಲು ವಿಕಾರ ವಿ
ನೋದ ಶೀಲನ ಶಿಷ್ಟರುಬ್ಬಟೆ
ಬೀದಿವರಿದುದು ಪರ್ಣಶಾಲೆಗೆ ಬಂದರಂಗನೆಯ
ಆದರಿಸಿ ಮುನಿಜನವನೊಯ್ಯನೆ
ಕೈದುಗಳ ಹೊರಗಿರಿಸಿ ದೂರದ
ಲಾ ದುರಾತ್ಮರು ಕಡು ಮೈಯಿಕ್ಕಿದರು ಮಾನಿನಿಗೆ ೯

ದೇವಿ ಚಿತ್ತೈಸುವುದು ನಿಮ್ಮಯ
ಭಾವ ಕೌರವನೃಪನ ಮೈದುನ
ಭಾವಿಸಲು ದುಸ್ಸಳೆಯ ರಮಣನು ಕಲಿ ಜಯದ್ರಥನು
ಈ ವಿವಿಧ ರತ್ನಾಭರಣ ಪ
ಟ್ಟಾವಳಿಯನನುಲೇಪನಾದಿಯ
ಪಾವುಡವನವಧರಿಸ ಬೇಕೆಂದಿಳುಹಿದರು ಮುಂದೆ ೧೦

ಎಸೆವಳೇ ದುಸ್ಸಳೆ ಜಯದ್ರಥ
ಕುಶಲನೇ ಪಾವುಡವ ನೀವೊ
ಪ್ಪಿಸುವುದೊಡೆಯರ ಮುಂದೆ ಬಿಜಯಂಗೈವರೀ ಕ್ಷಣಕೆ
ಶಿಶುಗಳಾವೆಮಗೀ ಸ್ವತಂತ್ರತೆ
ಯೆಸಕವೆಲ್ಲಿಯದಕಟ ವಸ್ತು
ಪ್ರಸರವೆಮಗೇಕೆನುತ ನುಡಿದಳು ನಗುತ ನಳಿನಾಕ್ಷಿ ೧೧

ನಾರ ಸೀರೆಯನುಡುವೆನೆಮಗಾ
ಹಾರವೇ ಫಲ ಮೂಲತತಿ ಶೃಂ
ಗಾರವೆಮಗೆ ಪತಿವ್ರತಾ ಗುಣವಲ್ಲದಿತರರಲಿ
ಸೇರುವುದೆ ಮನವಿದನು ಪಾಂಡು ಕು
ಮಾರರಿಗೆ ತೋರಿಸುವುದೈ ಬೀ
ಡಾರವನು ಬಿಡಿ ಬೇರೆ ವನದೊಳಗೆಂದಳಿಂದುಮುಖಿ ೧೨

ತಾಯೆ ನೀವಿವನೊಪ್ಪುಗೊಂಬುದು
ರಾಯ ಬಡವನೆ ಮತ್ತೆ ಪಾಂಡವ
ರಾಯರಿಗೆ ಪಾವುಡವನಟ್ಟುವನಿದನುಪೇಕ್ಷಿಸದೆ
ಆಯತಾಂಬಕಿ ತೆಗೆಸಿಯೆನೆ ನುಡಿ
ರಾಯಸವಿದೇಕೆನುತ ದೂತರ
ನಾ ಯುವತಿ ಜರಿದೊಳಗೆ ಹೊಕ್ಕಳು ತಳಿರ ಮಂಟಪವ ೧೩

ಮುಸುಳಿತಿವದಿರ ಮೋರೆ ಕಾರ್ಯದ
ಬೆಸುಗೆ ಹತ್ತದೆ ಸತಿಯ ನುಡಿಯಲಿ
ರಸವ ಕಾಣದೆ ಭೀತಿಯಲಿ ಮರಳಿದರು ಪಾಳಯಕೆ
ಉಸುರಲಮ್ಮೆವು ಜೀಯ ಸೋಲಳು
ಶಶಿವದನೆ ಗುಣ ಸಾಮದಲಿ ಸಾ
ಧಿಸುವುದರಿದೆನೆ ತಾನೆ ನೋಡುವೆನೆನುತ ಹೊರವಂಟ ೧೪

ಹೆಗಲ ಹಿರಿಯುಬ್ಬಣ ಕಠಾರಿಯ
ಬಿಗಿದುಡಿಗೆ ರತ್ನಾಭರಣ ಝಗ
ಝಗಿಸೆ ಝಣಝಣ ರವದ ರಭಸದ ಖಡಿಯ ತತಿ ಮೆರೆಯೆ
ಒಗುವ ಸಾಧು ಜವಾಜಿ ಕತ್ತುರಿ
ಯಗರು ಪರಿಮಳದಂಗವಟ್ಟದ
ವಿಗಡ ಹೊಕ್ಕನು ವನವನಾ ಪಾಂಚಾಲಿಯಾಶ್ರಮವ ೧೫

ತೊಲಗಿದುದು ಮುನಿ ನಿಕರವೀತನ
ಸುಳಿವು ಕಂಡು ಸುತೇಜದಲಿ ಖಳ
ತಿಲಕ ಬಂದನು ಪರ್ಣಶಾಲೆಯ ಮುಖದ ಮಂಟಪಕೆ
ಲಲನೆಯೊಳಹೊಗಲೊಡನೆ ಹೊಕ್ಕನು
ನಳಿನ ಮುಖಿ ಬಂದವ ಜಯದ್ರಥ
ನಳುಕಲೇಕೌ ದ್ರೌಪದಿಯೆ ನೀನೆನುತ ಮಂಡಿಸಿದ ೧೬

ಬೆದರಲೇತಕೆ ನಮ್ಮ ನಾದನಿ
ಮದವಳಿಗ ನೀನಾದರೊಡಹು
ಟ್ಟಿದನು ನೀನಹೆಯೆನಗೆ ನಿನ್ನಲಿ ಬೇರೆ ಭಯವೇನು
ಸದನವಿದು ಪತಿಶೂನ್ಯ ತಾನೆಂ
ಬುದು ಪತಿವ್ರತೆಯಲ್ಲಿಯನುಚಿತ
ವಿದು ವಿಚಾರವ ಬಲ್ಲೆ ನೀನೆಂದಳು ಸರೋಜಮುಖಿ ೧೭

ಅಹಹ ಪಾತಿವ್ರತ್ಯವತಿ ಸ
ನ್ನಿಹಿತವಲ್ಲಾ ನಿನಗೆ ಹಲಬರ
ಮಹಿಳೆ ಸತಿಯೆನಿಸುವರೆ ಸೂಳೆಯರೇಕ ಪುರುಷರಲಿ
ವಿಹರಿಸುವರೇ ಲೋಕಧರ್ಮದ
ರಹಣಿ ರಹಿಸುವುದೈಸಲೇ ನಮ
ಗಿಹುದು ಮತವಲ್ಲದೊಡೆ ಮಾಣಲೆನುತ್ತ ಮುರಿದೆದ್ದ ೧೮

ತರಳೆ ಮಿಗೆ ತಲ್ಲಣಿಸಿ ತಳಿರೋ
ವರಿಯ ಹೊಗುತಿರಲಟ್ಟಿ ಮೇಲುದ
ಬರಸೆಳೆದು ತುರುಬಿಂಗೆ ಹಾಯ್ದನು ಹಿಡಿದು ಕುಸುಬಿದನು
ಒರಲಿದಳು ಹಾ ಭೀಮ ಹಾ ನೃಪ
ವರ ಧನಂಜಯ ಹಾಯೆನುತ ಕಾ
ತರಿಸೆ ಕಮಲಾನನೆಯ ಕಂಠವನೌಚಿ ಹೊರವಂಟ ೧೯

ರಾಣಿವಾಸವಲಾ ಯುಧಿಷ್ಠಿರ
ನಾಣೆ ಬಿಡು ಬಿಡೆನುತ್ತ ಸುಜನ
ಶ್ರೇಣಿಯಡ್ಡೈಸಿದೊಡೆ ಬೀಸಿದನವನು ಖಂಡೆಯವ
ರಾಣಿ ನಡೆ ನಡೆ ನಮಗೆ ಪಾಂಡವ
ರಾಣೆಯಿಟ್ಟರು ಮುನಿಗಳಿಲ್ಲಿಹ
ಜಾಣು ತಪ್ಪುವುದೆನುತ ಹೊರವಂಡಿಸಿದನಾಶ್ರಮವ ೨೦

ಒಡನೆ ಬಂದನು ಧೌಮ್ಯಮುನಿಯಡಿ
ಯಿಡುತ ಘನ ರಕ್ಷೋಘ್ನ ಸೂಕ್ತವ
ನಡಿಗಡಿಗೆ ಜಪಿಸುತ ಜಯದ್ರಥ ಬೇಡ ಬೇಡೆನುತ
ಮಿಡುಕದೈತರಲೌಕಿ ಹೊಕ್ಕನು
ಪಡೆಯ ಮಧ್ಯದ ರಥವನೇರಿಸಿ
ನಡೆದನವ ಸೂಟಿಯಲಿ ತಾಟಿಸಿ ರಥದ ವಾಜಿಗಳ ೨೧

ಚೆಲ್ಲಿತೀ ಮುನಿಯೂಥ ದೆಸೆದೆಸೆ
ಗೆಲ್ಲ ಹರಿದುದು ಬಾಯ ಮೊರೆಗಳ
ಪಲ್ಲವದ ಪಾಣಿಗಳ ಸೂಸುವ ಸಮಿಧೆ ಬರ್ಹಿಗಳ
ತಲ್ಲಣದ ತೋಪಿನ ವಿಷಾದವ
ವಲ್ಲರಿಯ ಹೂದೊಡಬೆಗಳ ಹೊ
ಯ್ವಳ್ಳಿಗಳ ಮುನಿಜನವ ಕಂಡರು ಪಾಂಡುನಂದನರು ೨೨

ಏನು ಗಜಬಜ ಋಷಿ ಜನಂಗಳಿ
ಗೇನಪಾಯವೊ ನಮ್ಮ ಬನದಲಿ
ದಾನವರ ದುರ್ಘಟದ ದುರ್ನಯವಲ್ಲಲಾಯೆನುತ
ಆ ನರೇಂದ್ರ ಮನೋಹರದ ಮೃಗ
ಯಾ ನಿರೂಢಿಯ ಬಿಸುಟು ಬಂದನಿ
ದೇನಿದೇನೂಳಿಗವೆನುತ ಬೆಸಗೊಂಡನವರುಗಳ ೨೩

ಹೇಳಲಮ್ಮೆವು ಜೀಯ ಸಿಂಧು ನೃ
ಪಾಲ ದಶಮುಖನಾದನಾ ಪಾಂ
ಚಾಲೆ ಜಾನಕಿಯಾದಳಿಂದಿನ ರಾಜಕಾರ್ಯವಿದು
ಮೇಲೆ ರಾಘವತನದ ತೋಟಿಯು
ತೋಳ ಬಿಂಕವು ನಿಮ್ಮದೆನೆ ನರ
ಪಾಲನಾಜ್ಞೆಯಲೆಂದು ಹರಿದರು ಭೀಮ ಫಲುಗುಣರು ೨೪

ಐದುವರೆ ರಿಪು ಮರಣ ಸಿದ್ಧಿಯ
ಕೈದು ಮನೆಯಲ್ಲಿಹುದು ಬೇಂಟೆಯ
ಕೈದು ಕೈಯಲಿ ಸಮಯವಿಲ್ಲ ಮಹಾಸ್ತ್ರಕರ್ಷಣಕೆ
ಮೈದುನನ ಮೈಸರಸಕೀ ಹುಲು
ಗೈದು ಸಾಲದೆ ತಂಗಿ ದುಸ್ಸಳೆ
ಯೈದೆತನ ಬಯಲಾಯ್ತೆನುತ ಬೆಂಬತ್ತಿದರು ಖಳನ ೨೫

ಕಂಡರಡವಿಯಲವನನೆಲವೋ
ಭಂಡ ಫಡ ಹೋಗದಿರೆನುತ ಕೈ
ಕೊಂಡು ಸುರಿದರು ಸರಳನಾ ಜಿಂಗಳಿಯ ಸೇನೆಯಲಿ
ಭಂಡರಿವದಿರು ತಾವು ಕಡುಹಿನ
ಖಂಡೆಯದ ಸಿರಿವಂತರಿವರು
ದ್ದಂಡ ಭಟರೆನುತಾ ಜಯದ್ರಥ ನಿಲಿಸಿದನು ಬಲವ ೨೬

ಸೆರೆ ಸಹಿತ ತಾನೈದುವೆನು ನಿಜ
ಪುರವ ನೀವಾನುವುದು ಭೀಮನ
ನಿರಿವುದರ್ಜುನನೊಡನೆ ನಿಮಗುಗ್ಗಡದ ಸಮರವಿದು
ಇರಿತಕಂಜದ ಸ್ವಾಮಿಕಾರ್ಯದ
ಹೊರಿಗೆಯುಳ್ಳ ನವಾಯ ಬಿರುದಿನ
ಮುರುಕವುಳ್ಳ ಭಟಾಳಿ ನಿಲುವುದು ತಡೆವುದರಿ ಭಟರ ೨೭

ಎಂದು ವಾಘೆಯ ಕೊಂಡು ರಥವನು
ಮುಂದೆ ದುವ್ವಾಳಿಸಿದನಿತ್ತಲು
ಹಿಂದೆ ನಿಂದುದು ಗಜರಥಾಶ್ವ ಪದಾತಿ ಚತುರಂಗ
ಇಂದುವದನೆಯ ತೇರು ಹಾಯ್ದುದೆ
ಮುಂದೆ ಹೊಳ್ಳುಗರಡ್ಡವಿಸಿದರೆ
ಹಿಂದೆ ಹೊಲ್ಲೆಹವೇನೆನುತ ಹೊಕ್ಕೆಚ್ಚನಾ ಪಾರ್ಥ ೨೮

ಮುರಿದು ಮರನನು ಭೀಮನಹಿತರ
ತುರುಬಿದನು ಮಲೆತಾನೆಗಳ ಹೊ
ಕ್ಕೆರಗಿದನು ತುರುಗಿದನು ಭಟರಭ್ರದವಿಮಾನದಲಿ
ಜುರಿತಡಗಿನಿಂಡೆಗಳ ಮಿದುಳಿನ
ನಿರಿಗರುಳ ನೆಣ ವಸೆಯ ಜಿನಿಯಲಿ
ಮೆರೆದುದಾ ಮರನಲ್ಲಿ ತಳಿತುದು ಹೂತುದೆಂಬಂತೆ ೨೯

ಸಾಯಸಾವತಿ ಬಲರನೆಲ್ಲರ
ಕಾಯಲಿರಿಸಿಧ ಭಟರ ತಲೆಗಳು
ಬೀಯವಾದುವು ಮತ್ತೆ ರಪಣವ ತೋರಿಸಾ ರಣಕೆ
ರಾಯರಂಗವನೆತ್ತ ಬಲ್ಲ ನಿ
ಜಾಯುಧವ ಓಡಿ ನಿನ್ನ ಬಿರುದಿನ
ಬಾಯಬಿರವ್ರುದು ಮಘುವನೆನುತುರವಣಿಸಿದನು ಭೀಮ ೩೦

ಧನುವ ಕೊಂಡನು ಸರಳ ಸಾರದ
ಲನಿಲಜನ ಮುಸುಂಕಿದನು ಪಾರ್ಥನ
ಮೊನೆಗಣೆಯ ತರಿದೊಟ್ಟಿ ಬೊಬ್ಬಿರಿದನು ಜಯದ್ರಥನು
ತನತನಗೆ ಸೈಂಧವನ ಬೆಂಗಾ
ಹಿನ ಭಟರು ಭಾರಣೆಯಲೊದಗಿದ
ರನಿಬರನು ನಿಮಿಷಾರ್ಧದಲಿ ನಿರ್ಣೈಸಿದನು ಪಾರ್ಥ ೩೧

ಅಂಜದಿರು ಕಮಳಾಕ್ಷಿ ಧೌಮ್ಯ ನಿ
ರಂಜನನು ನಿನಗಿಂದು ಸುತಿ ಪವಿ
ಪಂಜರವಲಾಯೆನುತ ಹಾಯ್ದನು ಪವನಸುತ ರಥಕೆ
ಕುಂಜರನು ಕೈಯಿಕ್ಕೆ ನಿಲುಕದೆ
ಕಂಜವನವನಿಲಜನ ಜಾಡಿಯ
ಜಂಜಡಕೆ ದಿಟ್ಟನೆ ಜಯದ್ರಥನರಸ ಕೇಳೆಂದ ೩೨

ಸೆಳೆದೊಡಾಯುಧವಾತನೀತನ
ನಿಲುಕಿ ಹೊಯ್ದನು ದಂಡೆಯಿಂದದ
ಕಳಚಿ ಮಾರುತಿ ಹೊಕ್ಕಡವ ಚಿಮ್ಮಿದನು ಚೀಲಯುವ
ಖಳನ ಬಾಹುವನೊದೆದು ತುರುಬಿಗೆ
ನಿಲುಕಿ ಕುಸುಬಿದನವನ ಗೋಣಿನ
ಲಲಗ ಹೂಡಲು ಕಂಡನರ್ಜುನನಾ ವೃಕೋದರನ ೩೩

ಭೀಮ ಬಿಡಿಸದಿರವನ ಗಂಟಲ
ನೀ ಮದಾಂಧನನೊಯ್ದು ಕೆಡಹುವ
ಭೂಮಿಪತಿಯಾಜ್ಞೆಯಲಿ ಕಾಯಲಿ ಮುನಿದು ಮೇಣ್ಕೊಲಲಿ
ತಾಮಸನ ಬಿಗಿಯೆನಲು ನಗುತ
ದ್ದಾಮನೆಂದನು ಕೊಲುಂವೆನೆಂದೇ
ಕಾಮಿಸಿದೆನೈ ಪಾರ್ಥ ಕೆಡದೇಯೆನ್ನ ಸಂಕಲ್ಪ ೩೪

ನೆಸೆಯದಿರು ಸಂಕಲ್ಪ ಹಾನಿಯು
ನಸುಚಿತಕೆ ಮನ ತಾರದಿರು ಮಾ
ನಿನಿಯಿರಲಿ ರಥದಿಂದ ಕನ್ನಿಯ ಕೆಡಹು ಧಾರುಣಿಗೆ
ಮುನಿಪನೇರಲಿ ರಥದ ವಾಜಿಯ
ನನುಗೊಳಿಸಿ ಸಾರಥ್ಯದಲಿ ಬರ
ಲೆನುತ ಭೀಮನ ಮನದ ಖತಿಯನು ಬಿಡಿಸಿದನು ಪಾರ್ಥ ೩೫

ವೈರಿ ಬಾಹುದ್ವಯವ ಬದ್ದುಗೆ
ದಾರದಲಿ ಕಟ್ಟಿದನು ನಾರೀ
ಚೋರ ನಡೆ ನಡೆಯೆನುತ ತಿವಿದನು ಬಿಲ್ಲ ಕೊಪ್ಪಿನಲಿ
ಕೌರವೇಂದ್ರನ ಮತವೊ ನಿನ್ನ ವಿ
ಕಾರವೋ ಹೆಂಗಳ್ಳ ವಿದ್ಯೆಯ
ನಾರು ಕಲಿಸಿದರೆನುತ ತಂದರು ಧರ್ಮಜನ ಹೊರೆಗೆ ೩೬

ಸಿಂಧು ಭೂಪನಲಾ ಭುಜಾಗ್ರದ
ಬಂಧನವ ಬಿಡು ಭೀಮ ಶಿವ ಶಿವ
ನೊಂದನೈ ನಿಷ್ಕರುಣೆಗಳೆಂ ನೀವೆಂದನವನೀಶ
ಕೊಂದು ಬಿಸುಡುವ ನೇಮ ಕಂದ
ರ್ಪಾಂಧಕನನುಳುಹುವೊಡೆತನಗಿ
ನ್ನಿಂಧನವ ಮಾಡಿಸುವುದೈಸಲೆಯೆಂದನಾ ಭೀಮ ೩೭

ಹದನಿದೊಳ್ಳಿತು ತಂಗಿ ವೈಧ
ವ್ಯದಲಿ ನವೆಯಳೆ ಸುಬಲ ನಂದನೆ
ಯುದರ ಕುಂತೀದೇವಿಯುದರಕೆ ಭಿನ್ನ ಭಾವನೆಯೆ
ಕದನದಲಿ ಹಿಡಿವಡೆದವರ ಕೊಲು
ವುದು ನರೇಂದ್ರರ ಧರ್ಮವಲ್ಲಿ
ನ್ನಿದರ ಮೇಲಾವರಿಯೆವೆಂದನು ಧರ್ಮನಂದನನು ೩೮

ಈತನಳಿಯದೆ ಮತ್ಪ್ರತಿಜ್ಞಾ
ಖ್ಯಾತಿ ಮಸುಳದೆ ತಿದ್ದುವನುವನು
ಭೂತಳಾಧಿಪ ನೀವು ಬೆಸಸುವುದೆನಲು ಮುನಿಜನವ
ಆತ ನೋಡಿದನಾವುದಿದಕನು
ನೀತಿಯೆನೆ ಧೌಮ್ಯಾದಿ ಸುಜನ
ವ್ರಾತ ನಿಶ್ಚೈಸಿದರು ಮನದಲಿ ಧರ್ಮ ನಿರ್ಣಯವ ೩೯

ಮಾನಧನರಿಗೆ ವಧೆಯೆನಿಪುದಭಿ
ಮಾನಭಂಜನವಿವನು ಕಟ್ಟಭಿ
ಮಾನಿ ಭಂಗಿಸಿ ಬಿಟ್ಟೊಡೀತಂಗಿದುವೆ ಮರಣವಲ
ಈ ನುಡಿಯ ಸಲಿಸಿದೊಡೆ ಇವನಪ
ಮಾನಹತನಿದು ಧರ್ಮ ನಿಶ್ಚಯ
ವೇನು ಸಂಶಯವಿಲ್ಲೆನುತ ನುಡಿದುದು ಮುನಿಸ್ತೋಮ ೪೦

ಅಹುದೆನುತ ಕಲಿಭೀಮ ಮಾಡಿದ
ರಹವನದನೇನೆಂಬೆನೈ ಕೂ
ರಿಹ ಕಠಾರಿಯ ಹಣಿಗೆಯಲಿ ಬಾಚಿದನು ಸಿರಿಮುಡಿಯ
ಅಹಿತ ಶಿರವಿದಲಾಯೆನುತ ಗೃಹ
ಮಹಿಳೆಯರು ವಿಹಿತಾಂಗುಲಿಯ ಸಂ
ಪ್ರಹರಣದಿ ಪರಿಭವಿಸಿದರು ಘೊಳ್ಳೆನಲು ನಿಖಿಳಜನ ೪೧

ಬಿಟ್ಟರೀತನ ತೋಳ ಹಿಂಗೈ
ಗಟ್ಟುಗಳನೆಲೆ ಕುನ್ನಿ ಹೋಗೆನೆ
ಕೆಟ್ಟ ಕೇಡದನೇನ ಹೇಳುವೆನಾ ಜಯದ್ರಥನ
ಬೆಟ್ಟದಿಂದುರುಳುವೆನೊ ಹಾಸರೆ
ಗಟ್ಟಿ ಹೊಗುವೆನೊ ಮಡುವನೆನುತಡಿ
ಯಿಟ್ಟನಂತಃಕಲುಷ ಚಿತ್ತ ದುರಂತ ಚಿಂತೆಯಲಿ ೪೨

ಚಿಂತಿಸಿದೊಡೇನಹುದು ಹೊಗುವೆನು
ಕಂತುಮಥನನ ಮರೆಯನಿವದಿರಿ
ಗಂತಕನು ತಾನಹೆನು ಗೆಲುವೆನು ಬಳಿಕ ಬವರದಲಿ
ಭ್ರಾಂತಿಯೇ ಬಿಡು ತನ್ನನೆನುತ ಪು
ರಾಂತಕ ಧ್ಯಾನದಲಿ ವಿಮಲ
ಸ್ವಾಂತನೇಕಾಗ್ರದಲಿ ಭಜಿಸಿದನಿಂದುಶೇಖರನ ೪೩

ಇವನ ನಿಷ್ಠೆಗೆ ಮೆಚ್ಚಿ ಗೌರೀ
ಧವನು ಮೈದೋರಿದನು ರಾಜ
ಪ್ರವರ ಕೊಟ್ಟೆನು ಬೇಡು ಸಾಕು ಭವನ್ಮನೋರಥವ
ವಿವರಿಸೆನೆ ಕಂದೆರೆದು ಮುಂದಿಹ
ಶಿವನ ಕಂಡನು ಮೈಯ ಚಾಚಿದ
ನವನಿಯಲಿ ಜಯ ಜಯ ಮಹೇಶ ನಮಃಶಿವಾಯೆನುತ ೪೪

ವರದನಾದೈ ಶಂಭು ಕರುಣಾ
ಕರ ಹಸಾದವು ಪಾಂಡು ಸುತರ್ಗೆ
ವರನು ದಿನವೊಂದರಲಿ ಗೆಲುವುದು ತನಗಭೀಷ್ಟವಿದು
ಕರುಣಿಸೈ ತನಗೆನಲು ನಕ್ಕನು
ಗಿರಿಸುತೆಯ ಮೊಗ ನೋಡಿ ಭಾರಿಯ
ವರವ ವಿವರಿಸಿದನು ಜಯದ್ರಥನೆಂದನಿಂದುಧರ ೪೫

ಪಾಶುಪತಶರವೆನ್ನ ಸತ್ವ ವಿ
ಳಾಸವದೆ ಫಲುಗುಣನ ಕೈಯಲಿ
ವಾಸವಾಬ್ಜಭವಾದಿ ಬಿರುದರ ಬಗೆಯದಾಹವಕೆ
ಆ ಸುಭಟನೊಬ್ಬನನುಳಿಯೆ ಮಿ
ಕ್ಕೇಸು ಪಾಂಡವರುಗಳನೊಂದೇ
ವಾಸರದಲವಗಡಿಸು ಹೋಗೆಂದನು ಮಖಧ್ವಂಸಿ ೪೬

ಸಾಕು ಜೀಯ ಹಸಾದವೆಂದವಿ
ವೇಕನಿಧಿ ಬೀಳ್ಕೊಂಡನೀಶನ
ನೀ ಕುಮಾರರು ವನದೊಳಿದ್ದರು ಖತಿಯ ಭಾರದಲಿ
ನೂಕು ನೂಕಾಡುವ ವಿಪತ್ತಿನ
ವೈಕೃತಿಗೆ ನಾನೊಬ್ಬನೇ ದಿಟ
ವಾಕೆವಾಳನೆ ಶಿವ ಶಿವಾಯೆಂದರಸ ಬಿಸುಸುಯ್ದ ೪೭

ಬಂದ ಮಾರ್ಕಂಡೇಯ ಮುನಿಗಭಿ
ವಂದಿಸಿದನೀ ಬ್ರಹ್ಮ ಸೃಷ್ಟಿಯ
ಲಿಂದು ತಾನಲ್ಲದೆ ಸುಧಾಕರ ಸೂರ್ಯವಂಶದಲಿ
ಹಿಂದೆ ನಡೆದವರಾರು ಪರಿಭವ
ದಿಂದ ನಮ್ಮಂದದಲಿ ವಿಪಿನದೊ
ಳಿಂದುಮುಖಿಯರು ಭಂಗಪಟ್ಟರೆಯೆನುತ ಬಿಸುಸುಯ್ದ ೪೮

ಎನಲು ನಕ್ಕನು ಮುನಿಪನವನಿಪ
ಜನ ಶಿರೋಮಣಿ ಕೇಳು ನಿಮ್ಮಾ
ವನದೊಳಬುಜಾನನೆಯ ಕೊಂಡೋಡಲು ಜಯದ್ರಥನು
ಅನುಜರಾಗಳೆ ಹರಿದು ಮರಳಿಚಿ
ವನಜಮುಖಿಯನು ತಂದರವನನು
ನೆನೆಯಬಾರದ ವಿಧಿಯ ಮಾಡಿದರೆಂದನಾ ಮುನಿಪ ೪೯

ಅರಸ ಮುನಿಯದಿರಾವ ಪಾಡಿನ
ನರಪತಿಗಳೈ ನೀವು ವಿಶ್ವಂ
ಭರಿಯ ಘನತೆಯ ಕೇಳಿದರಿಯಾ ಕೈಟಭಾಂತಕನ
ವರ ಮುನಿಯ ಶಾಪವನು ತಾನೇ
ಧರಿಸಿ ನರರೂಪಿನಲಿ ನವೆದುದ
ನರಸ ಬಣ್ಣಿಸಲೆನ್ನ ಹವಣಲ್ಲೆಂದನಾ ಮುನಿಪ ೫೦

ಅಡವಿಯಲಿ ತೊಳಲಿದನು ರಾಮನ
ಮಡದಿಯನು ರಕ್ಕಸನು ಕದ್ದನು
ಕೆಡಿಸಿ ಬಳಿಕರಸಿದನು ರಾಣೀವಾಸವನು ಕೂಡೆ
ಕಡಲ ಮಧ್ಯದ ಖಳನೊಡನೆ ಕೈ
ಹೊಡೆದುದಲ್ಲಿಗೆ ತೆತ್ತಿಗರು ನಾ
ಡಡವಿಗೋಡಗವಾಳು ಕುದುರೆಗಳಸುರ ವಿಗ್ರಹಕೆ ೫೧

ಸಾಗರದ ತೆರೆಗಳಲಿ ಗಿರಿಗಳ
ತೂಗಿ ಸೇನೆಯ ನಡೆಸಿ ದಶಮುಖ
ನಾಗ ಕೆಡಿಸಿದು ರಾಮರಮಣಿಯ ಬಿಡಿಸಿದಾಯಸವ
ಈಗಳೀ ನರರೇನನಾನುವ
ರಾ ಗರುವ ರಘುರಾಯ ವಜ್ರಕೆ
ಬೇಗಡೆಯ ವಿಧಿ ಮಾಡಿತೆಂದನು ಮುನಿ ನೃಪಾಲಂಗೆ ೫೨

ಎಂದು ರಾಮಾಯಣವ ವಿಸ್ತರ
ದಿಂದ ಹೇಳಿದು ಸಂತವಿಟ್ಟನು
ಕಂದು ಕಸರಿಕೆಯಡಗಿತಾ ಧರ್ಮಜನ ಚಿತ್ತದಲಿ
ಸಂದಣಿಸೆ ತನುಪುಳಕ ಪರಮಾ
ನಂದ ರಸಮಯ ನಯನಜಲ ಭರ
ದಿಂದಲೆಸೆದರು ವೀರನಾರಾಯಣನ ಕರುಣದಲಿ ೫೩

ಇಪ್ಪತ್ತುಮೂರನೆಯ ಸಂಧಿ

ಸೂ. ಧರಣಿಪತಿ ತಂದಿತ್ತನಾ ದ್ವಿಜ
ನರಣಿಯನು ಬಳಿಕಮಲ ಧರ್ಮದ
ಸರಣಿಯಿಂದೆತ್ತಿದನು ವನದಲಿ ನಿಜಸಹೋದರರ

ಕೇಳು ಜನಮೇಜಯ ಧರಿತ್ರೀ
ಪಾಲ ರಾಮಾಯಣವನಾ ಮುನಿ
ಹೇಳಿದನು ಹೂಳಿದನು ಭೂಪನ ಮಾನಸವ್ಯಥೆಯ
ಹೇಳಿದನು ಸಾವಿತ್ರಿಯುನ್ನತ
ಶೀಲವನು ಪತಿಭಕ್ತಿಯಿಂದವೆ
ಕಾಲ ನುಂಗಿದ ಪತಿಯ ಮರಳಿಚಿ ತಂದ ಸಂಗತಿಯ ೧

ಪತಿ ಭಕುತಿಯುನ್ನತಿಕೆಯಲಿ ನಿ
ಷ್ಕೃತೆಯಲಾ ಸಾವಿತ್ರಿಯಾಕೆಯ
ನುತ ಚರಿತ್ರದವೋಲು ನಿಮ್ಮ ದ್ರೌಪದಾದೇವಿ
ಹಿತವನಾಚರಿಪವಳು ವಂಶೋ
ನ್ನತಿಯನುದ್ಧರಿಸುವಳು ನಿಮಗುಪ
ಹತಿಯದೆಲ್ಲಿಯದೆಂದು ಮಾರ್ಕಂಡೇಯ ಮುನಿ ನುಡಿದ ೨

ಮಾನನಿಧಿ ಸಾವಿತ್ರಿಯೌಪಾ
ಖ್ಯಾನವನು ಕೇಳಿದನು ಚಿತ್ತ
ಗ್ಲಾನಿಯನು ಬೀಳ್ಕೊಟ್ಟನಮಳೋತ್ಸಾಹ ಭಾವದಲಿ
ಕಾನನಾನುಭವಕ್ಕೆ ಕಡೆಯಿ
ನ್ನೇನು ನಮಗೆನುತತುಳ ಹರುಷಾ
ನೂನ ಕುಂತೀತನಯರಿದ್ದರು ಪರ್ಣಶಾಲೆಯಲಿ ೩

ಹಿಂಗಿದವು ಹನ್ನೊಂದುವರೆ ವರು
ಷಂಗಳಟವೀ ತಟದೊಳಿರಲರು
ದಿಂಗಳೊಳಗೊಂದಾದುದಾಪತ್ತಾ ಮಹೀಶರಿಗೆ
ತುಂಗ ವಿಕ್ರಮನಾ ಮುನೀಶ್ವರ
ಸಂಗತಿಯ ಸೊಗಸಿನಲಿ ಬಹು ದಿವ
ಸಂಗಳನು ನೂಕಿದನು ನೃಪತಿ ಪಲಾಶ ಶಾಲೆಯಲಿ ೪

ವಿಮಲ ವಾನಪ್ರಸ್ಥ ಜನದಾ
ಶ್ರಮದೊಳಗೆ ಸಾರಂಗ ಮೃಗವಿಳೆ
ಯಮರನೌಪಾಸನದ ಸಾಧನದರಣಿಯನು ಕೊಂಡು
ಕಮಲಸಖನುದಯದಲಿ ಸಂಧ್ಯಾ
ರಮಣಿಯಂಭಿವಂದನೆಗೆ ಸನ್ಮುನಿ
ಸಮಿತಿ ಹಿಂಗಿದ ಹಿಂದೆ ಕೊಂಡೋಡಿತು ವನಾಂತರಕೆ ೫

ಎಲೆಲೆ ಮೃಗವರಣಿಯನು ವಂಚಿಸಿ
ಕಳೆದುದೋ ಕಾಳಾಯ್ತೆನುತ ತ
ಲ್ಲಣಿಸಿದಳು ನಿಜಪತಿಯ ಭಯದಲಿ ಮುನಿಯ ವಧುವಂದು
ಹೊಳೆಯ ಸಂಧ್ಯಾಸಾಧುಗಳು ಕಳ
ವಳಿಸಲಾ ದ್ವಿಜನರಿದು ಪಾರ್ಥಿವ
ರಿಳೆಯ ಬಿಟ್ಟರಲಾಯೆನುತ ಹರಿತಂದನಾಶ್ರಮಕೆ ೬

ಎಲೆ ಯುಧಿಷ್ಠಿರ ದೋಷವಿದು ನಿ
ನ್ನಳವಿಗೈದುವುದರಣಿಯನು ಮೃಗ
ವೆಳೆದುಕೊಂಡೀ ಹೊದರ ಹೊಕ್ಕುದು ಬಹಳ ಕಾನನದ
ಅಳಿದುದಸ್ವಾಧಾನವಿತರರ
ಹಳಿವಿಗಾನೊಳಗಾದೆನೆನೆ ಮುನಿ
ತಿಲಕನೌಪದ್ರವವನರಿದವನೀಶ ಹೊರವಂಟ ೭

ಚಾಳಿಸಿದ ಹದವಿಲ್ಲು ಮುಮ್ಮೊನೆ
ಬೋಳೆಗಳ ನಿಡುಗುಂಡುಗಳ ಬಡಿ
ಕೋಲುಗಳನೆಕ್ಕಡವನುರು ಪಾರಿಯದ ಕುಪ್ಪಸವ
ಮೇಳವಿಸಿ ಹೊರವಂಟನವನೀ
ಪಾಲ ಬೇಂಟೆಗೆ ಮೃಗದ ಹೆಜ್ಜೆಯ
ಮೇಲೆ ಹೆಜ್ಜೆಯ ನಡೆಸುವನು ತನ್ನನುಜರೊಡಗೂಡಿ ೮

ತರಣಿಯನ್ವಯನಂದು ಮಾಯಾ
ಹರಿಣನನು ಬೆಂಬತ್ತಿ ವಿಹ್ವಲ
ಕರಣನಾದಂದದಲಿ ಮಹದಾರಣ್ಯ ವಾಸದಲಿ
ಧರಣಿಪತಿ ಬಳಿಸಲಿಸಿ ಮುನಿಪತಿ
ಯರಣಿಯನು ಕೊಂಡೊಯ್ದ ಹುಲು ಮೃಗ
ಸರಣಿಯಲಿ ಸೈವರಿದರಂದಾಕರ್ಣ ಮಾರ್ಗಣರು ೯

ಇರುಬಿನೊಳಗದೆ ಕುತ್ತು ಹೆಮ್ಮರ
ದುರುಗಳೊಳಗದೆ ತೊಡಚು ಬಾಣವ
ನೆರಗಿ ತಿವಿ ತೋಡಿಟ್ಟೆಯಲಿ ಸಿಡಿವಲೆಯವೊಡ್ಡೆನುತ
ಅರಸಿದರು ನಟ್ಟಡವಿಯಲಿ ಮುಂ
ದುರುಬಿದರು ಬೆಳ್ಳಾರ ಬಲೆಗಳ
ಪರಹಿ ಸೊಪ್ಪಿನ ತೋಹಿನಲಿ ಸಿಲುಕಿಸಿದರಾ ಮೃಗವ ೧೦

ಕೇಳು ಜನಮೇಜಯ ಹಿಮಾಂಶು ವಿ
ಶಾಲ ವಂಶಜರಡವಿಯಲಿ ಮುನಿ
ಪಾಲನರಣಿಯನೊಯ್ವ ಮೃಗವನು ಹಿಡಿದರೊಳಬಿದ್ದು
ಮೇಲೆ ತೋರಿತು ಢಗೆ ಮಹೀಶರ
ತಾಳಿಗೆಗಳೊಣಗಿದವು ಬಳಲಿಕೆ
ಯೇಳಿಗೆಯಲಾಸನ್ನ ಲತೆಯಿರುಬಿನಲಿ ಮಲಗಿದರು ೧೧

ದೂರವಾದುದು ನಿಳಯವೀ ಕಾಂ
ತಾರ ನಿರ್ಜಲವೈದಲಂಘ್ರಿಗೆ
ಭಾರ ಪಥವಿನ್ನೇನು ಹದನೆಂದರಸನಳವಳಿದು
ನೀರ ತಾರೈ ಹೋಗು ನಕುಲ ಸ
ರೋರುಹದ ಪತ್ರದಲಿ ಪೊಟ್ಟಣ
ವಾರಿಯನು ಕಟ್ಟೆಂದು ಕುಂತೀಸೂನು ನೇಮಿಸಿದ ೧೨

ಬಗೆದನೇ ಬಳಲಿಕೆಯನತಿ ಸಹ
ಸಿಗಳ ದೇವನು ಹಿರಿಯನಾಜ್ಞೆಯ
ನುಗುಳಲಮ್ಮದೆ ಧನುವ ಕೊಂಡನು ನಡೆದನತಿ ಪಥವ
ದೃಗುಮನೋ ಮಂಜುಳದ ಕಂಜಾ
ಳಿಗಳ ಕಡು ಪರಿಮಳದ ಪಸರದ
ಸೊಗಸು ತೀವಿತು ವಿಮಳ ಪದ್ಮಾಕರದ ಪವಮಾನ ೧೩

ಹಿತವನೈ ಹಿರಿಯಯ್ಯನೆನಗೆಂ
ದತುಳಬಲ ಪರಿತೋಷದಲಿಮಾ
ರುತನ ಬಳಿವಿಡಿದೈದಿದನು ನಕುಲಾಂಕನಾ ಕೊಳನ
ಹತಿಯಹಂದು ನಿನಗೊಮ್ಮೆ ತಪ್ಪದು
ಹಿತವು ಬಳಿಕೆಂಬಂತೆ ಖಗ ಸಂ
ತತಿಗಳುಲಿದೊಪ್ಪಿದವು ಪದ್ಮಾಕರದ ತೀರದಲಿ ೧೪

ಇರವಿನಲಿ ರಚನೆಯಲಿ ಮಧುರೋ
ತ್ತರವ ನೆರೆ ಬೀರುತ್ತಲಂತಃ
ಕರಣದಲಿ ಕತ್ತರಿಸಿ ಕೊಂಡಿಹ ಕುಜನರಂದದಲಿ
ಪರಿಮಳದ ಪಸರದಲಿ ಶೈತ್ಯೋ
ತ್ಕರುಷದಲಿ ಲೇಸೆನಿಸಿ ಕುಡಿದೊಡೆ
ಹರಣವನೆ ಹಿಂಗಿಸುವ ಸರಸಿಯ ವಾರಿ ಚೆಲುವಾಯ್ತು ೧೫

ಖಳನ ಸತ್ಯದವೋಲು ವಂಚಿಸಿ
ಗೆಲಿದುದಾತನ ಮನವ ಮಾಯೆಯ
ಚೆಲುವಿನಂತಿರೆ ಚದುರು ಕೆಡಿಸಿತು ತಿಳಿಯಲರಿದೆನಿಸಿ
ಲಲನೆಯರ ಹೃದಯದವೊಲೀಕ್ಷಿಸೆ
ನೆಲೆಯನೀಯದ ಕೃತಕ ಸರಸಿಯ
ಸುಲಭತೆಗೆ ಸಹದೇವನಣ್ಣನು ಸೋತು ನಡೆತಂದ ೧೬

ಇಳಿದು ಮೊನೆಮುಂಜೆರಗನಗ್ರಕೆ
ಬಲಿದು ಹೊಕ್ಕನು ಜಾನುದಘ್ನ
ಸ್ಥಳವನಂಜುಳಿಯಿಂದ ತೊಳೆದನು ಚರಣ ವದನವನು
ತುಳುಕಿದನು ವಾರಿಯನು ತನ್ನಯ
ಬಳಲಿಕೆಯನಪಹರಿಸಿ ಭೂಪತಿ
ಗಳಿಗೆ ಬಳಿಕಾನೊಯ್ವೆನೆಂದನು ತನ್ನ ಮನದೊಳಗೆ ೧೭

ಜಲವನಂಜುಳಿಯಿಂದ ಮೊಗೆದೀಂ
ಟಲು ನೆನೆಯಲಭ್ರದಲಿ ಗುಹ್ಯಕ
ನುಲಿದನೆಲೆ ನಕುಲಾಂಕ ಮಾಣೆನಗುತ್ತರವ ರಚಿಸಿ
ಬಳಿಕ ಸಲಿಲವನೀಂಟು ಮಾತುಗ
ಳೊಳವು ಮರುಳಾಗದಿರೆನಲು ಥಗೆ
ಗಳುಕಿ ಬಳಲಿದು ಮೇಲೆಯಾಲಿಸಿ ಮೀರಿದನು ನುಡಿಯ ೧೮

ಜಡಿಯಲೆರಡಳ್ಳೆಗಳು ಕೊರಳಲಿ
ಕುಡಿದನದಕವನಬುಜದೆಲೆಯಲಿ
ಹಿಡಿದನನಿಬರಿಗಮಳ ಜಲವನು ಮರಳಿ ನಿಮಿಷದಲಿ
ತಡಿಯನಡರಿದು ಧೊಪ್ಪನವನಿಗೆ
ಕೆಡೆದು ಪರವಶನಾದನಿತ್ತಲು
ತಡೆದನೇಕೆಂದಟ್ಟಿದನು ಸಹದೇವನನು ನೃಪತಿ ೧೯

ತವಕ ಮಿಗೆ ನಡೆತಂದು ವ್ಯೆಮರೆ
ದವನ ಕಂಡನು ಬಹಳ ಥಗೆ ಪರಿ
ಭವಿಸಲುದಕವ ಕುಡಿದು ಬಳಿಕಾರೈವೆನಿದನೆನುತ
ಲವಲವಿಸಿ ತಾಳಿಗೆಯ ತಲ್ಲಣ
ದವನು ಹೊಕ್ಕನು ಕೊಳವನಮಳಾಂ (ಯಾಯ್ತು
ಬುವನು ಮೊಗೆದನು ಮೊಗಕೆ ಮೋಹಲು ಮೇಲೆ ದನಿ ೨೦

ಬಿಡು ಬಿಡೆಲೆ ಸಹದೇವಯೆನ್ನಯ
ನುಡಿಗೆ ಮಾರುತ್ತರವ ಕೊಡು ಮುಂ
ಗೆಡದೆ ಮುಂದಣ ನಿನ್ನವನ ಕಂಡಿಂತು ಮರುಳಹರೆ
ಮಡಿಯಲೆಳೆಸದಿರೆನಲು ಥಗೆಯವ
ಗಡಿಸೆ ಸೈರಿಸಲರಿಯದುತ್ತರ
ಗೊಡದೆ ಜಲವೀಂಟಿದನು ದಾಂಟಿದುದಸು ಕಳೇಬರವ ೨೧

ಈತನತಿ ವ್ಯೆಮೆರೆದನತ್ತಲು
ಕಾತರಿಸಿದನು ಭೂಪನಿಬ್ಬರ
ಮಾತು ಮುಖದಿರುಹಿತ್ತು ಶಿಶುಗಳಿಗಾವ ಹದನಾಯ್ತೊ
ತಾತ ಹೋಗ್ಯೆ ಪಾರ್ಥ ಬಾಲಕ
ರೇತಕತ್ತಲೆ ತಡೆದರೆಂಬುದ
ನೀ ತಿಳಿದು ತಾ ಜಲವನೆನೆ ಕೈಗೊಂಡು ನಡೆತಂದ ೨೨

ಹಿಮದ ಗಾಳಿಯ ಪಥವಿಡಿದು ಮ
ಧ್ಯಮದ ಪಾಂಡವನೈತರುತ ಮುಂ
ದಮಲ ಸರಸಿಯ ತೀರದಲಿ ಕೀಲಿಸಿದ ಮಗ್ಗುಲಲಿ
ಯಮಳರೊರಗಿರೆ ಕಂಡು ಮನದಲಿ
ತಮವ ಹಿಡಿದನು ನೀರುಗುಡಿದೀ
ಮಮತೆ ಮಿಗಲಾರೈವೆನೆನುತಿಳಿದನು ಸರೋವರವ ೨೩

ಚರಣ ವದನವ ತೊಳೆದು ಥಗೆ ಡಾ
ವರಿಸಲಕ್ಷಮನಾಗಿ ಕರದಲಿ
ತೆರೆಗಳನು ತೆಗೆನೂಕಿ ಮೊಗೆದನು ಗರಳಮಯ ಜಲವ
ಮರುಳೆ ನೀ ಕೌಂತೇಯ ಮಾದ್ರೇ
ಯರನು ನೋಡುವುದಿತ್ತ ನನಗು
ತ್ತರವನಿತ್ತುದಕವನು ಕುಡಿಯೆಂದುದು ನಭೋವಚನ ೨೪

ಮೇಲೆಯಾರೈವನೆ ಸುತೃಷ್ಣಾ
ಲೋಲಚಿತ್ತನು ಕಾಮಿ ಮೃಗಯಾ
ಕೇಳಿ ಲಂಪಟನರ್ಥ ಲಾಭ ದ್ಯೂತಲೋಲುಪನು
ಕೇಳು ಜನಮೇಜಯ ತಟಾಕದ
ಕಾಳಕೂಟವ ಕುಡಿದನರ್ಜುನ
ಕಾಲಿಡುತ ಡೆಂಡಣಿಸಿ ವ್ಯೆಮರೆದವರ ಕೂಡಿದನು ೨೫

ತಡೆದರತ್ತಲು ಮೂವರನುಜರು
ಮಡಿದರೇನೋ ಚಿತ್ರವಾಯಿತು
ನಡೆ ಸಮೀರಕುಮಾರ ನೀ ಹೋಗತ್ತ ತಳುವದಿರು
ತಡೆಯದ್ಯೆತಹುದೆನೆ ಹಸಾದವ
ನುಡಿಯುನಾನುತ್ಯೆದಿ ಹೆಜ್ಜೆಯ
ಹಿಡಿದು ಬಳಿ ಸಲಿಸಿದನು ಬರೆ ಬರೆ ಕಂಡನದ್ಭುತವ ೨೬

ದಟ್ಟುಗೆಡೆದಸುಗಳೆದ ತನ್ನೊಡ
ಹುಟ್ಟಿದರನೀಕ್ಷಿಸಿದನುಸುರಿನ
ಬಟ್ಟೆಯನು ನೋಡಿದನು ಮೂಗಿನ ಬಳಿಯ ಬೆರಳಿಟ್ಟು
ಮುಟ್ಟಿತಿವರಿಗೆ ಮರಣವಿನ್ನೇ
ನಟ್ಟಿ ಕೊಲುವೆನು ಜವನ ಮೃತ್ಯುವ
ನಿಟ್ಟೆಲುವನುದುರಿಸುವೆನೆನುತೂದರಿದನು ಕಲಿಭೀಮ ೨೭

ಮನ್ನಣೆಗೆ ಹಿರಿಯಯ್ಯನೆಂದಾ
ನಿನ್ನು ಬಗೆವೆನೆ ಜವನ ಗಂಟಲ
ಮುನ್ನ ತಿರುಹುವೆನೆನುತ ಕಿಡಿಕಿಡಿಯೋದನಾ ಭೀಮ
ಇನ್ನೊದರಿ ಫಲವೇನು ಕಡಿವೆನು
ಮುನ್ನ ಜಲವನು ಬಳಿಕ ನೋಡುವೆ
ನೆನ್ನವರ ಮಾರ್ಗವನೆನುತ ಮೊಗೆದನು ವಿಷೋದಕವ ೨೮

ಮಾಣು ಮಾಣುತ್ತರವ ಕೊಡು ಮುಂ
ಗಾಣಬೇಹಂದು ತಂದೆ ತನಗೀ
ಕ್ಷೋಣಿಯಲಿ ಪೂರ್ವದ ಪರಿಗ್ರಹವೀ ಸರೋವರವು
ಜಾಣನಾದೊಡೆ ಜಾರಬಿಡು ಬಿಡು
ಕೇಣವನು ನೀನೆನಲು ಗಗನದ
ವಾಣಿಯನು ಮನ್ನಿಸದೆ ಮಾರುತಿಯೀಂಟಿದನು ಜಲವ ೨೯

ದಡದಡಿಸಿ ಕೊಳನಿಂದ ಹೊರಗಡಿ
ಯಿಡುತ ಬಳಲಿದನನಿಲ ಸುತನವ
ರೊಡನೆ ವ್ಯೆಯಿಕ್ಕಿದನು ಕಳಚಿದ ನೀಲ ಗಿರಿಯಂತೆ
ಅಡಿಗೆಡೆದನಾ ಭೀಮನಿತ್ತಲು
ಕಡು ನಿರೋಧವ ಹಿಡಿದು ತಾನೇ
ನಡೆದು ಬಂದನು ಧರ್ಮಸುತನಾ ಕೊಳನ ಪಥವಿಡಿದು ೩೦

ಮೇಲೆ ಮಗುಳ್ದಾಲಿಗಳ ಚಾಚಿದ
ತೋಳ ಮೇಲಿನ ತಲೆಯ ಸುಯ್ಲಿನ
ಲೀಲೆಯುಡಗಿದ ಮುಖದ ಮಸುಳಿದ ಕಾಯಕಾಂತಿಗಳ
ಮೇಲು ಮುಸುಕಿನ ಮಗ್ಗುಲಿನಲಿಹ
ನಾಲುವರನೀಕ್ಷಿಸುತ ಭೂಪತಿ (ಚಿತ್ತದಲಿ
ಕೋಲು ಮರುಮೊನೆಗೊಂಡವೋಲ್ ಮರುಗಿದನು ೩೧

ಮುಸುಕಿನಲಿದೆದೆವರ ಮೊಗ
ಮುಸುರುಗಳನಾಲಿಸಿದನಕಟಾ
ಶಿಶುಗಳಿಗೆ ಕಡು ಹಾನಿಯಾಯಿತೆ ಶಿವ ಮಹಾದೇವ
ನಿಶಿತಶಸ್ತ್ರದ ಗಾಯವಿಲ್ಲು
ಬ್ಬಸದ ಸಾವಿನಾವುದೋ ನಾ
ನಸುಗಳೆಯುದೇಕುಳಿದೆನೆಂದಳಲಿದನು ಯಮಸೂನು ೩೨

ಇಂದಿನಲಿ ಕಡೆಯಾಯ್ತಲಾ ವಿಮ
ಳೇಂದುವಂಶಕೆ ಕೌರವನ ಛಲ
ಸಂದುದಿನ್ನ ಹಿತಾವನೀಶರಿಗಾಯ್ತು ಪರಿತೋಷ
ಕೊಂದರಾರಕಟಕಟೆನುತ್ತರ
ವಿಂದನಾಭನ ಕೃಪೆಗೆ ಬಾಹಿರ
ನಿಂದು ತಾನಾದೆನೆ ಮಹಾದೇವೆಂದು ಬಿಸುಸುಯ್ದ ೩೩

ಹೋಗಲಿನ್ನೀ ನೀರುಗುಡಿದಿವ
ರಾಗು ಹೋಗರಸುವೆನೆನುತ ಥಗೆ
ತಾಗಿದವನಿಪನಿಳಿದು ಹೊಕ್ಕನು ವಿಷ ಸರೋವರವ
ಬಾಗಿ ಮೊಗೆದನು ಜಲವನಭ್ರದೊ
ಳಾಗಲಾದುದು ರಭಸವೆಲೆ ಸಕ
ಳಾಗಮಜ್ಞ ಮಹೀಶ ಕೇಳೆಂದುದು ನಭೋನಿನದ ೩೪

ಅನುಜರವಿವೇಕಿಗಳು ಪರಿಣತ
ಜನದಲಧಿಕನು ನೀ ನಿಧಾನಿಸಿ
ನನಗೆ ಮಾರುತ್ತರವನಿತ್ತು ನಿರಂತರಾಯುದಲಿ
ತನುವಿಗಾಪ್ಯಾಯನವ ಮಾಡುವು
ದೆನಲು ಕೇಳಿದು ಥಗೆಯ ಸೈರಿಸಿ
ಘನ ಪಥದ ನುಡಿ ಯಾರದೆಂದವನೀಶನಾಲಿಸಿದ ೩೫

ಬಿಸುಟನುದಕವನಾ ನುಡಿಯನಾ
ಲಿಸಿದನಾರೈ ನೀನು ನಿನಗಾ
ಗಸದಲಿರವೇನಸುರನೋ ಕಿನ್ನರನೊ ನಿರ್ಜರನೊ
ಉಸುರೆನಲು ತಾ ಯಕ್ಷನೀ ಸಾ
ರಸವು ನನ್ನದು ನಿನ್ನ ತಮ್ಮದಿ
ರಸುವನೆಳೆದವ ನಾನು ಕೇಳೈ ಧರ್ಮಸುತಯೆಂದ ೩೬

ಬಾಲಕರು ನೀವೆನ್ನ ಮಾತನು
ಕೇಳಿ ಉದಕವ ಕುಡಿವುದೆನೆ ಭೂ
ಪಾಲ ನಿನ್ನವರೆನ್ನ ಮಾತನು ಕೇಳಿ ಮನ್ನಿಸದೆ
ಮೇಲುಗಾಣದೆ ನೀರು ಕುಡಿದು ವಿ
ತಾಳಿಸಿದರಿಂದೆನ್ನ ಮಾತನು
ಕೇಳಿ ನೀನುತ್ತರವ ರಚಿಸೆನೆ ನೃಪತಿ ಹೇಳೆಂದ ೩೭

ಜಲನಿಧಿಗೆ ಸರಿ ಸರಸಿ ಯಾವುದು
ನೆಲಕೆ ಹಿತವನದಾರು ಮರ್ತ್ಯಾ
ವಳಿಗೆ ಮಾತೆಯದಾರು ಸೂರ್ಯಪ್ರಭೆಗೆ ಸರಿಯೇನು
ತಿಳುಹು ಧರ್ಮಜ ಸಕಲ ಧರ್ಮಾ
ವಳಿಯ ಸಾರವನೆನಲು ಯಕ್ಷನ
ಬಲುಮೆಗವನೀಪಾಲನತಿ ಪರಿತೋಷದಲಿ ನುಡಿದ ೩೮

ಗಗನವಬುಧಿಗೆ ಸರಿ ಸರೋವರ
ಜಗಕೆ ಹಿತವನು ಶಕ್ರ ಮನುಜಾ
ದಿಗಳ ಮಾತಾರೂಪು ಗೋವುಗಳಿದು ನಿಧಾನ ಮತ
ಬಗೆಯಲಗ್ಗದ ಸತ್ಯವೆಂಬುದು
ಗಗನಮಣಿಗೆಣೆಯೆನಲು ಚಿತ್ತಕೆ
ಸೊಗಸಿ ತಲೆದೂಗಿದನು ಮಗುಳಿಂತೆಂದನಾ ಖಚರ ೩೯

ನಯವಿದನೆ ಕೇಳಾವನೈ ಕ್ಷ
ತ್ರಿಯನು ವಿಪ್ರರೊಳಾವನೈ ಶ್ರೋ
ತ್ರಿಯನು ಸುಜನರೊಳಾವನೈ ಮಹಾಪುರುಷನೆಂಬವನು
ನಿಯತ ಧೀಮನದಾರು ದೇವ
ಪ್ರಿಯನದಾವನು ಕಠಿಣ ಕಷ್ಟಾ
ಶ್ರಯನದಾವನು ಧರ್ಮಸುತ ಹೇಳೆಂದನಾ ಖಚರ ೪೦

ಧೃತಿಯುತ ಕ್ಷತ್ರಿಯನು ವೇದ
ಪ್ರತಿಯುತ ಶ್ರೋತ್ರಿಯನಹಿಂಸಾ
ರತನು ಮಹಪುರುಷನು ಸುಧೀಮನು ಸಾಧುಸೇವಕನು
ಸತತ ಪರರುಪಕಾರಿ ದೇವ
ಪ್ರತತಿ ಪ್ರೀಯನು ಪರರ ಗುಣದು
ನ್ನತಿಯ ಸೈರಿಸದವನು ಕಷ್ಟನು ಯಕ್ಷ ಕೇಳೆಂದ ೪೧

ನಿಂದ್ಯನಾವನು ಲೋಕದೊಳಗಭಿ
ವಂದ್ಯನಾವನು ಜೀವವಿರೆ ಮೃತ
ನೆಂದಡಾವನು ದೇಶ ಕಳಿವಹುದಾರ ದೆಸೆಯಿಂದ
ಸಂದ ಯಜ್ಞವದೆಂತು ಕೆಡುವುದು
ತಂದೆ ಹೇಳೈ ತನಗೆನಲು ಸಾ
ನಂದದಿಂದವೆ ಕಾಣಿಸಿದನಾ ಖಚರಗುತ್ತರವ ೪೨

ಕೇಳು ಪರನಿಂದಕನೆ ನಿಂದ್ಯನು
ಹೇಳಲೇಂ ಪರಹಿತನೆ ವಂದ್ಯನು
ಹೇಳಿದಿಚ್ಛೆಗೆ ನಡೆವ ನೃಪನಿಂದಳಿವುದಾ ದೇಶ
ಕೇಳು ನಡೆವೆಣನೇ ದರಿದ್ರನು
ಸಾಲದೆನಿಸಿದ ದಕ್ಷಿಣೆಯ ಯ
ಜ್ಞಾಳಿ ನಿಷ್ಫಲವೆಂದು ನುಡಿದನು ರಾಯಕೌಂತೇಯ ೪೩

ನರಕಿ ಯಾವನು ಸುಜನರಲಿ ಬಾ
ಹಿರನದಾವನು ಲೋಕವರಿಯಲು
ಹರಣವಿರೆ ಹೊಂದಿದನದಾವನು ಭೂಮಿಪಾಲರಲಿ
ಮರುಳದಾವನು ಮಾನ ಭಂಗದಿ
ಭರಿತನಾವನು ಹೇಳು ಧರ್ಮಜ
ಸರಸಿಯಲಿ ಬಳಿಕುದಕವನು ಕುಡಿಯೆಂದನಾ ಖಚರ ೪೪

ಎನೆ ಕೃತಘ್ನನೆ ನರಕಿ ವಿದ್ಯಾ
ಧನ ಮದಾಂಧನೆ ಬಾಹಿರನು ಹೊ
ಕ್ಕನುವರವ ಹಿಂಗುವ ಮಹೀಪತಿ ಜೀವವಿರೆ ಮೃತನು
ವಿನುತ ಗುರುವರಿಯದನೆ ಮರುಳಂ
ಗನೆಯರಲಿ ವಿಶ್ವಾಸಪರನೇ
ಜನವರಿಯಲಭಿಮಾನ ಹೀನನು ಯಕ್ಷ ಕೇಳೆಂದ ೪೫

ಒಲಿದನೊಡಲನು ಧರ್ಮಸಂಗತಿ
ಗಳ ಸುಸಂವಾದದಲಿ ನಿಜತನು
ಪುಳಕವುಬ್ಬರಿಸಿದುದು ಗಬ್ಬರಿಸಿದುದು ದುಷ್ಕೃತವ
ಎಲೆ ಮಹೀಪತಿ ಮೆಚ್ಚಿದೆನು ಬೇ
ಡಳಿದ ತಮ್ಮಂದಿರಲಿವೊಬ್ಬನ
ತಲೆಯ ಬದುಕಿಸಿ ಕೊಡುವೆನೆನೆ ಯಮತನುಜನಿಂತೆಂದ ೪೬

ಅಸುವನಿತ್ತೈ ಖಚರಪತಿ ಜೀ
ವಿಸಲಿ ನಕುಲನು ಧನ್ಯ ನಾನೆನೆ
ನಸುನಗುತ ಚೇತರಿಸಿ ಮೈ ಮುರಿದೆದ್ದನಾ ನಕುಲ
ನಿಶಿತಮತಿ ಮೆಚ್ಚಿದೆನು ಬೇಡಿ
ನ್ನಸುವನೊಬ್ಬಂಗಿತ್ತೆನೆನೆ ಜೀ
ವಿಸಲಿ ಸಹದೇವಾಂಕನೆಂದನು ಧರ್ಮನಂದನನು ೪೭

ಜನಪ ನಿನ್ನಾಳಾಪವೆನ್ನಯ
ಮನಕೆ ವಿಸ್ಮಯವಾಯ್ತು ಭೀಮಾ
ರ್ಜುನರು ನಿನ್ನೊಡಹುಟ್ಟಿದರು ನೀನವರಿಗತಿ ಹಿತನು
ಅನುಜರವರಿರಲೇಕೆ ಮಾದ್ರೀ
ತನುಜರೆಂಬರ ಬಯಸಿದೈ ಹೇ
ಳೆನಲು ನಸುನಗೆ ಮೊಳೆಯ ನುಡಿದನು ಧರ್ಮನಂದನನು ೪೮

ಸಾವು ಬೊಪ್ಪಂಗಾಗೆ ಮಾದ್ರೀ
ದೇವಿ ತನ್ನನು ಕರೆದು ಶಿಶುಗಳ
ನೋವು ಕೇಡಿದು ನಿನ್ನದಾರೈದಿವರ ಸಲಹುವುದು
ಭಾವ ಭೇದವನಣುವ ಬಗೆಯದೆ
ಕಾವುದೆಲೆ ಮಗನೆಂದು ಬೆಸಸಿದ
ಳಾವ ಪರಿಯಲಿ ಮರೆವೆನೈ ಮಾದ್ರೀಕುಮಾರಕರ ೪೯

ಎನಲು ಮೆಚ್ಚಿದನುಳಿದ ಭೀಮಾ
ರ್ಜುನರ ಹರಣವನಿತ್ತು ನಿಜ ನಂ
ದನನಪ್ಪಿದನೊಲವಿನಲಿ ಯಮರಾಜನೈತಂದು
ತನುಜ ಸಾಕಿನ್ನಾಯ್ತು ನಿಮಗೀ
ವನನಿವಾಸವು ಬೀಳುಗೊಡು ಮುನಿ
ಜನವನಿನ್ನಜ್ಞಾತ ವಾಸಕೆ ಮನವ ಮಾಡೆಂದ ೫೦

ನೀವು ಪಾಂಡವರೆಂದು ನಿಮ್ಮನ
ದಾವ ಮಾನವರರಿಯದಿರಲಿ ಮ
ಹಾ ವಿಭವದಲಿ ಬೆಳಗುವುದು ಬಳಿಕವನಿ ಮಂಡಲವ
ದೈವಬಲ ನಿಮಗುಂಟು ವೇಣಿ
ನ್ನಾವುದರಿದಲ್ಲೆಂದು ತನುಜನ
ನೋವಿ ಮನ್ನಿಸಿ ಬೀಳುಗೊಟ್ಟನು ಪಾಂಡುನಂದನರ ೫೧

ಅರಣಿಯನು ತಂದಿತ್ತು ಧರಣೀ
ಸುರನ ಮನ್ನಿಸಿ ಮುನಿಗಳನು ಭೂ
ಸುರರ ಸಚಿವರ ಪರಿಕರರ ಧೌಮ್ಯಾದಿ ಮಂತ್ರಿಗಳ
ವರ ಸುಭದ್ರಾದೇವಿ ಪಾಂಚಾ
ಲರನು ಧೃಷ್ಟದ್ಯುಮ್ನ ಮೊದಲಾ
ಗಿರೆ ನಿಜಾಪ್ತರನವರ ಮಂದಿರಕೆ ಕಳುಹಿದನು ೫೨

ಹರಿ ನಮೋ ಜಯ ಭಕ್ತರಘು ಸಂ
ಹರ ನಮೋ ಜಯ ಸಕಲ ಭುವನೇ
ಶ್ವರ ನಮೋ ಜಯ ಕೃಷ್ಣ ಕೇಶವ ವಿಷ್ಣು ವಾಮನನೆ
ಪರಮ ಪುಣ್ಯಶ್ಲೋಕ ಜಯ ಜಗ
ಭರಿತ ನಿರ್ಮಳ ರೂಪ ಜಯ ಜಯ
ಕರುಣಿ ರಕ್ಷಿಸು ರಾಯ ಗದುಗಿನ ವೀರನಾರಯಣ ೫೩

ಇತಿ ಶ್ರೀಮದಚಿಂತ್ಯ ಮಹಿಮ ಗದುಗಿನ ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪರಿಪುಷ್ಟ ವಚಃ ಷಟ್ಪದೀ ನಿಕಾಯ
ಶ್ರೀಮತ್ಕುಮಾರವ್ಯಾಸ ಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಅರಣ್ಯಪರ್ವಂ ಸಮಾಪ್ತಮಾದುದು

ವಿ ರಾ ಟ ಪ ರ್ವ

ಮೊದಲನೆಯ ಸಂಧಿ

ಸೂ. ಕಾಯಿದರು ಸತ್ಯವನು ವನವಾ
ಸಾಯತವ ನೆರೆ ಗೆಲಿದು ಪಾಂಡವ
ರಾಯರೋಲೈಸಿದರು ಬಂದು ವಿರಾಟ ನಗರಿಯಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಮುನಿಜನ ನೃಪಜನಂಗಳ
ಬೀಳುಗೊಟ್ಟನು ಭೂಮಿಪತಿ ಬಲವಂದು ಹುತವಹನ
ಮೇಲು ಶಕುನದ ಚಾರು ನಿನದವ
ನಾಲಿಸುತ ಸೋದರರು ಸಹಿತ ವ
ನಾಲಯವ ಹೊರವಂಟು ಸಾರಿದರೊಂದು ವಟಕುಜವ ೧

ಬಂದು ವಟಕುಜದಡಿಯಲನಿಬರು
ನಿಂದು ದುರುಪದಿ ಸಹಿತ ಬಳಲಿಕೆ
ಯಿಂದ ವಿಶ್ರಮಿಸಿದರು ಚಿಂತಿಸಿ ಧರ್ಮನಂದನನು
ಹಿಂದೆ ಹನ್ನೆರಡಬ್ದ ಸವೆದವು
ಮುಂದಣನುವಿಂಗೇನು ಗತಿ ಬಳಿ
ಕೊಂದು ವರುಷಜ್ಞಾತವಾಸಕ್ಕಾವ ಠಾವೆಂದ ೨

ಬಡಗಲವರದು ಮೂಡಣರಸುಗ
ಳೊಡೆ ಗೆಣೆಯರಾಗಿಹರು ತೆಂಕಣ
ಕಡೆಯವರು ಕಂಡಿಹರು ಕೆಲ ಬಲದವರು ಕೊಂಡೆಯರು
ಪಡುವಣವರತಿ ಕೃಶರು ನಾವಿ
ನ್ನಡಗಿರಲು ತೆರನಾವುದೆಂದೆನೆ
ನುಡಿದನರ್ಜುನ ದೇವನವನೀಪತಿಗೆ ವಿನಯದಲಿ ೩

ವಳಿತವನು ಹೊಕ್ಕಿರಿದು ಕೌರವ
ರೊಳಗೆ ಹಗೆಯಾಗಿಹನು ಕೀಚಕ
ಬಲ ವಿರಾಟನಿಗವನ ದೆಸೆಯಿಂ ಭಯ ವಿಹೀನವದು
ಮುಳಿದು ಹೇಳಿಕೆಯಾದ ರವಿಸುತ
ಕಲಿ ತ್ರಿಗರ್ತಾದಿಗಳೆನಿಪ ಮುಂ
ಡಳಿಕರನು ಕೈಕೊಳ್ಳದಾಳುವರವರು ಪಶ್ಚಿಮವ ೪

ನೃಪತಿ ನಿಶ್ಚೈಸಿದನು ಮತ್ಸ್ಯಾ
ಧಿಪನ ನಗರಿಯೊಳಲ್ಲಿ ಸೈರಿಸಿ
ಕೃಪಣತನದಲಿ ನೂಕಬೇಹುದು ನುಡಿದ ವತ್ಸರವ
ಗುಪಿತವೆಂತಳವಡುವುದಾಶ್ರಯ
ದಪದೆಸೆಯನೆಂತಾನುಪಿರಿ ನಿ
ಷ್ಕೃಪೆಯೊಳೆಂತಾನಂಬೆನೆಂದನು ಧರ್ಮನಂದನನು ೫

ದೇವ ನಿಮ್ಮಯ ಮತವೆ ಮತವೆಮ
ಗಾವ ವೇಷದ ವಿವರ ನಿಮಗದ
ನೀವು ಬೆಸಸುವುದೆಂದು ಭೀಮಾರ್ಜುನರು ಬಿನ್ನವಿಸೆ
ನಾವು ಭೂಸುರ ವೇಷದಲಿ ಸಂ
ಭಾವಿತರು ಮತ್ತಲ್ಲಿ ಸನ್ಯಾ
ಸಾವಲಂಬನ ಕಂಕನೆಂಬಭಿಧಾನ ತನಗೆಂದ ೬

ವಲಲನೆಂಬಭಿಧಾನದಲಿ ನೃಪ
ನಿಳಯವನು ಸಾರುವೆನು ತಾನೆಂ
ದುಲಿಯೆ ಮಾರುತಿ ನುಡಿದ ವರ ನಾಟ್ಯವಿದ ವೇಷವನು
ಫಲುಗುಣನು ಹಯ ಗೋ ನಿವಾಸ
ಸ್ಥಳ ವಿಳಾಸಿತರೆನಲು ಯಮಳರು
ಲಲನೆ ಬಿನ್ನಹ ಮಾಡಿದಳು ಸೈರಂಧ್ರಿ ವೇಷವನು ೭

ತೊಳಲಿದಿರಿ ಹನ್ನೆರಡು ವರುಷವು
ಹಳುವದಲಿ ಸೊಂಪಡಗಿ ಪರರೊಡ
ನುಳಿಗೆಲಸದೋಲಗವಿದೆಂತೈ ಸಾರ್ವಭೌಮರಿಗೆ
ಬಳಲಿದಿರಿ ಹಿರಿದಾಗಿ ನಿಮ್ಮವ
ನಳಲಿಸಿದೆನೆನ್ನಿಂದ ಪಾಪಿಗ
ಳೊಳರೆ ಭುವನದೊಳೆಂದು ಕುಂತೀಸೂನು ಬಿಸುಸುಯ್ದ ೮

ಒಡಲ ಬಳಿ ನೆಳಲಿಂಗೆ ಗತಿ ಬೇ
ರ್ಪಡಿಸಿಹುದೆ ಸುಖದುಃಖವಿವು ನಿ
ಮ್ಮಡಿಗಳಲಿ ತನು ನಾಲ್ಕರಲಿ ಜೀವಾತ್ಮ ನೀವೆಮಗೆ
ಅಡವಿಯೋ ಸಾಮ್ರಾಜ್ಯ ನಿಮ್ಮಡಿ
ಯೊಡನಿರಲು ನೀವಿಲ್ಲದಾ ಪುರ
ವಡವಿ ನಮಗಹುದೆಂದು ಬಿನ್ನವಿಸಿದರು ಭೂಪತಿಗೆ ೯

ತುಷ್ಟನಾದನು ನೃಪತಿ ಕೃತ ಪರಿ
ಶಿಷ್ಟಪಾಲನು ಜಗದೊಳತ್ಯು
ತ್ಕೃಷ್ಟ ಚರಿತನು ತೆಂಕ ದೆಸೆಗೆ ಸಹೋದರರು ಸಹಿತ
ದುಷ್ಟ ಮೃಗಗಳ ಬೇಂಟೆಯಾಡಿ ವ
ಸಿಷ್ಠ ಮುನಿಯಾಶ್ರಮದ ಸುಜನರ
ರಿಷ್ಟವನು ಪರಿಹರಿಸುತೈತಂದನು ಸರಾಗದಲಿ ೧೦

ಕಾಳಿ ಪರಮ ಕರಾಳಿ ಸುರಮುನಿ
ಮೌಳಿಮಂಡಿತ ಚರಣೆ ಖಳ ದನು
ಜಾಳಿ ಮರ್ದಿನಿ ಘನ ಕಪರ್ದಿ ವರಾರ್ಧ ತನುಯುತಳೆ
ಶೂಲ ಪರಶು ಪರಶ್ವಧಾದಿಗ
ಳಾಳುತೊಪ್ಪುವ ಕರಚತುಷ್ಟಯೆ
ಪಾಲಿಸೆಮ್ಮನೆನುತ್ತ ದುರ್ಗೆಯನಂದು ನುತಿಸಿದರು ೧೧

ಬಂದು ಮತ್ಸ್ಯ ಪುರೋಪಕಂಠದ
ನಂದನದ ಕೆಲಕಡೆಯಲನಿಬರು
ನಿಂದು ನಾಲುಕು ದೆಸೆಯನೀಕ್ಷಿಸಿ ನಿಜನಿವಾಸದಲಿ
ತಂದ ಚರ್ಮದಲಖಿಳ ಕೈದುವ
ನೊಂದು ಹೆಣನಾಕಾರದಲಿ ಬಿಗಿ
ದೊಂದು ಬನ್ನಿಯ ಮರನ ತುದಿಯಲಿ ಕಟ್ಟಲೇರಿದರು ೧೨

ತೆಗೆಯದಿರಿ ನೀವೆಂದು ತುರುಗಾ
ಹಿಗಳಸಂಜೆಸಿ ಧರ್ಮಸುತ ದೃಗು
ಯುಗವ ಮುಚ್ಚಿ ಸುರೇಂದ್ರ ಯಮ ವರುಣಾದಿಗಳಿಗೆರಗಿ
ವಿಗಡನೀ ಕಲಿಭೀಮನೀ ಕೈ
ದುಗಳನೀತಂಗೀಯದಿರಿ ಕೈ
ಮುಗಿದು ಬೇಡಿದೆನೆಂದು ಸುರರಿಗೆ ನುಡಿದನವನೀಶ ೧೩

ಈವುದಾ ಬೇಡಿದರೆ ಪಾರ್ಥಂ
ಗೀವುದೀಯಜ್ಞಾತ ವಾಸದೊ
ಳೀ ವಿಗಡ ಭೀಮಂಗೆ ಕೊಡದಿರಿಯೆಸಲು ಖತಿಗೊಂಡ
ನೀವು ಕುಂತಿಯ ಮಕ್ಕಳಾದಿರಿ
ನಾವು ದುರ್ಯೋಧನನವರು ತ
ಪ್ಪಾವುದಿದಕೆಂದನಿಲಸಂತನೌಡೊತ್ತಿ ಗರ್ಜಿಸಿದ ೧೪

ಸುರನಿಕರ ಕಾದಿರಲಿ ವೇಣೀ
ಧರಣಿ ಕೊಡೆನೆಂದಿರಲಿ ಹಸ್ತಿನ
ಪುರಿಗೆ ಥಾಳಿಯನಿಡುವೆನಮರರ ಮೋರೆಗಳ ತಿವಿದು
ಉರುತರಾಸ್ತ್ರವನೊಯ್ವೆನೆಂದ
ಬ್ಬರಿಸಿ ಮಾರುತಿ ನುಡಿಯೆ ತಮ್ಮನ
ಬರಸೆಳೆದು ಬಿಗಿಯಪ್ಪಿ ಮೈದಡವಿದನು ಭೂಪಾಲ ೧೫

ಅವಧಿಯೊಂದೇ ವರುಷವಿದರೊಳ
ಗೆವಗೆ ಸೈರಣೆಯುಂಟು ನೀ ಮುನಿ
ದವಗಡಿಸಿದೊಡೆ ಬಳಿಕ ಸೈರಿಸಲರಿಯೆ ಮನ ಮುಳಿದು
ಅವನಿಯಲಿ ಹನ್ನೆರಡು ವರುಷವು
ನವೆದುದುಂ ನಿಷ್ಫಲವಲಾ ಕೌ
ರವರಿಗತಿ ಲಾಗಹುದು ನೀನೇ ಬಲ್ಲೆ ಹೋಗೆಂದ ೧೬

ಹದುಳವಿಟ್ಟನು ಭೀಮನನು ನಿ
ರ್ಮದನು ಮತ್ಸ್ಯನ ಪುರಿಗೆ ಯತಿ ವೇ
ಷದಲಿ ಬಂದನು ಹೊನ್ನ ಸಾರಿಯ ಚೀಲ ಕಕ್ಷದಲಿ
ಇದಿರೊಳಾನತರಾಯ್ತು ಕಂಡವ
ರುದಿತ ತೇಜಃಪುಂಜದಲಿ ಸೊಂ
ಪೊದವಿ ಬರಲು ವಿರಾಟ ಕಾಣಿಸಿಕೊಂಡು ಬೆಸಗೊಂಡ ೧೭

ಇತ್ತ ಬಿಜಯಂಗೈದ ಹಿರಿಯರಿ
ದೆತ್ತಣಿಂದೈತಂದಿರೈ ಅ
ತ್ಯುತ್ತಮದ ವೇಷದ ಮಹಾತ್ಮರ ಕಂಡು ಬದುಕಿದೆವು
ಇತ್ತಪೆವು ಬೇಡಿದುದ ನಾವೆನೆ
ಸುತ್ತಬಳಸೆವು ರಾಜಸೇವೆ ನಿ
ಮಿತ್ತ ಬಂದೆವು ಮುನ್ನಿನೋಲಗವಂತರಿಸಿತಾಗಿ ೧೮

ಕೆಟ್ಟುದಿಂದ್ರಪ್ರಸ್ಥ ಪಾಂಡವ
ರುಟ್ಟು ಹೋದರು ನಾರ ಸೀರೆಯ
ನಟ್ಟಡವಿ ಮನೆಯಾಯ್ತು ರಾಜಾನ್ವಯದ ರಾಯರಿಗೆ
ಬಿಟ್ಟರೆಮ್ಮನು ಜಠರ ಭರಣಕೆ
ನೆಟ್ಟನಾಶ್ರಯವಿಲ್ಲದಿರೆ ಕಂ
ಗೆಟ್ಟು ಬಂದೆವು ಕಂಕನೆಂಬಭಿಧಾನ ತನಗೆಂದ ೧೯

ಓಲಗಕೆ ಬಂದಖಿಳ ರಾಯರ
ಮೌಳಿಮೌಕ್ತಿಕಮಣಿ ಮಯೂಖ ನಿ
ವಾಳಿಯಲಿ ನೆರೆ ಮೆರೆವುದಾತನ ಪಾದಪದ್ಮಯುಗ
ಕಾಲವಾವನನಾವ ಪರಿಯಲಿ
ಕೀಳು ಮಾಡದು ಧರ್ಮ ಪುತ್ರನ
ನಾಳುಗೊಂಡನು ಮತ್ಸ್ಯನೆಲೆ ಜನಮೇಜಯ ಕ್ಷಿತಿಪ ೨೦

ಆದುದೈ ನಿರ್ವಾಹ ಕಂಕಂ
ಗಾದುದಾ ಮತ್ಸ್ಯೇಶನಿಂದ ವಿ
ವಾದವಿಲ್ಲದೆ ಸೇವೆ ನಿಜವಾದಂತೆಯಿರುತಿರಲು
ಹೋದವಿತ್ತಲು ಕೆಲವು ದಿನ ತನ
ಗಾದ ಸಾಹಾಯ್ಯದಲಿ ರಿಪುಬಲ
ಭೇದಿ ಮಾರುತಿ ಬಂದು ಕಂಡನು ಮತ್ಸ್ಯಭೂಪತಿಯ ೨೧

ಏನು ಪರಿಣತೆ ನಿನಗೆ ಬಾಣಸಿ
ಯಾನು ಭೀಮನ ಮನೆಯವನು ಮ
ತ್ತೇನು ಭುಜಬಲವರಿವೆನಗ್ಗದ ಮಲ್ಲವಿದ್ಯೆಯಲಿ
ನೀನಧಿಕನೆಂದಾ ಸಮೀರನ
ಸೂನುವನು ಮನ್ನಿಸಿದನಿತ್ತಲು
ಮಾನನಿಧಿ ಮರುದಿವಸ ಹೊಕ್ಕನು ಪಾರ್ಥನಾ ಹೊಳಲ ೨೨

ಸುರಪನರಸಿಯ ಶಾಪದಲಿ ಸಿತ
ತುರಗನರೆವೆಣ್ಣಾಗಿ ಮತ್ಸ್ಯೇ
ಶ್ವರನ ಮಗಳಿಗೆ ನಾಟ್ಯವಿದ್ಯಾಭ್ಯಾಸ ಸಂಗದಲಿ
ಇರಲು ಯಮಳರು ತುರಗ ಗೋವ್ರಜ
ಭರಣರಾದರು ಬಳಿಕ ಪಾಂಡವ
ರರಸಿ ಸಾರಿದಳೊಲವಿನಲಿ ವೈರಾಟ ಪಟ್ಟಣವ ೨೩

ತರಣಿಗಂಜಿದಡಿಂದು ತಲೆಗಾ
ಯ್ದಿರಿಸಿದನೊ ಮರೆಯಾಗಿ ತಿಮಿರದ
ಹೊರಳಿಗಳನೆನೆ ಮುಡಿಗೆ ಮೋಹಿದ ವೇಣಿವಲ್ಲರಿಯ
ಹಿರಿದು ಸೈರಿಸಲಾರೆನೆಂದೊಡ
ನಿರಿಸಿದನೊ ಕೈರವವನನಲಂ
ದರರೆ ಕಂಗಳ ಥಾಳವೊಪ್ಪಿರೆ ಬಂದಳಬುಜಮುಖಿ ೨೪

ಮೊಳೆಯು ಮೋಲುದು ಜಾರೆ ಜಾರಿದ
ರಳಿಮನರು ಕಂಗಳಿನ ಮಿಂಚಿನ
ಹೊಳುಕಿನೆಡೆ ನಡೆಗೆಟ್ಟು ನಿಂದರು ಚಿತ್ತವಿಹ್ವಲರು
ತೆಳುವಸುರು ತಲೆದೋರೆ ತೋರಿದು
ದಲಗು ಮರು ಮೊನೆಯೆನುತ ವಿಟರಳ
ವಳಿಯೆ ನಡೆತರುತಿರ್ದಳಂಗನೆ ರಾಜ ವೀಧಿಯಲಿ ೨೫

ಎಲೆಲೆ ಮದನನ ಗಜವು ತೊತ್ತಳ
ದುಳಿದುದೋ ಕಾಮುಕರನೆನೆ ಗಾ
ವಳಿಯೊಳಗೆ ಗಾರಾಯ್ತು ಗರುವಿಕೆ ವಿಟ ವಿದೂಷಕರ
ಅಳುಕಿದರು ಮನುಮಥನ ಗರುಡಿಯ
ಬಲುವೆಗಾರರು ಬಂದಳಗ್ಗದ
ನಳಿನಮುಖಿ ಬಹುಜನದ ಮನಕಚ್ಚರಿಯನೊದವಿಸುತ ೨೬

ಜನದ ಜಾಣಕ್ಕಾಡಲಾ ಮೋ
ಹನ ಮಹಾಂಬುಧಿಯೊಳಗೆ ನೃಪನಂ
ಗನೆಯು ಭವನಕೆ ಬರಲು ಬೆರಗಾಯ್ತಖಿಳ ನಾರಿಯರು
ವನಿತೆ ಮಾನಿಸೆಯಲ್ಲ ಮನುಜರಿ
ಗಿನಿತು ರೂಪೆಲ್ಲಿಯದು ವಿಸ್ಮಯ
ವೆನುತ ಮನದೊಳಗಳುಕಿದರು ಮತ್ಸ್ಯೇಶನರಸಿಯರು ೨೭

ಬರವ ಕಂಡು ಸುದೇಷ್ಣೆ ಮನದಲಿ
ಹರುಷ ಮಿಗೆ ಹೊಂಗಿದಳು ಕರೆ ಕರೆ
ತರುಣಿಯಾರೆಂದಟ್ಟಿದಳು ಕೆಳದಿಯರನನಿಬರನು
ಸರಸಿಜಾಯತದಂದವನು ಮೋ
ಹರಿಸಿ ಮುಂಚುವ ಪರಿಮಳವನಂ
ದರಸಿ ಬೀರುತ ಬಂದು ಹೊಕ್ಕಳು ರಾಜ ಮಂದಿರವ ೨೮

ಕೆಳದಿಯರು ಕಾಣಿಸಿದರರಸನ
ಲಲನೆಯನು ಪರಿಯಂಕ ಪೀಠದ
ಕೆಲಕೆ ಕರೆದಳು ಕಮಲವದನೆಯನುಚಿತ ವಚನದಲಿ
ನಳಿನಮುಖಿ ನೀನಾರು ನಿನಗಾ
ರೊಳರು ರಮಣರು ಮಾಸಿಕೊಂಡಿಹ
ಮಲಿನ ವೃತ್ತಿಯಿದೇಕೆನುತ ಬೆಸಗೊಂಡಳಂಗನೆಯ ೨೯

ಅತುಳಬಲ ಗಂಧರ್ವರೈವರು
ಪತಿಗಳೆನಗುಂಟೆನ್ನ ಚಿತ್ತಕೆ
ಖತಿಯ ಮಾಡಿದರೊಂದು ವರುಷವು ಬಿಡುವೆನವರುಗಳ
ಸತತವಾ ಕುಂತೀಕುಮಾರರ
ಸತಿಯರೋಲೈಸಿದ್ದೆ ಬಳಿಕವ
ರತಿ ಗಹನ ಘನನಿಷ್ಠುರಾದರು ತನಗೆ ಬರವಾಯ್ತು ೩೦

ಏನ ಮಾಡಲು ಬಲ್ಲೆಯೆಂದರೆ
ಮಾನಿನಿಯ ಸಿರಿಮುಡಿಯ ಕಟ್ಟುವ
ಸೂನ ಮುಡಿಸುವ ವರ ಕಟಾಕ್ಷಕೆ ಕಾಡಿಗೆಯನಿಡುವ
ಏನ ಹೇಳಿದ ಮಾಡಬಲ್ಲೆನು
ಸಾನುರಾಗದೊಳೆಂದೆನಲು ವರ
ಮಾನಿನಿಯು ನಸುನಗುತ ನುಡಿಸಿದಳಂದು ವಿನಯದಲಿ ೩೧

ಎನಲು ಮೆಚ್ಚಿದಳಾ ವಿರಾಟನ
ವನಿತೆ ವೀರರ ವಧುವನಾ ಸಖಿ
ಜನದೊಳಗೆ ನೇಮಿಸಿದಳನಿಬರಿಗಾಯ್ತು ನಿರ್ವಾಹ
ಮನದ ಥಗೆಯುಡಗಿದವು ಮತ್ಸ್ಯೇ
ಶನ ಪುರಾಂತರದೊಳಗೆ ಮೈ ಮರೆ
ಸನುಪಮಿಂತ ಭುಜಸತ್ವರಿದ್ದರು ಭೂಪ ಕೇಳೆಂದ ೩೨

ಆ ಸುದೇಷ್ಣಾ ದೇವಿಯರ ನಿಡು
ಕೇಶವನು ಹಿಕ್ಕುವಳು ಮುಂದದಲಿ
ಸೂಸು ಮಲ್ಲಿಗೆಯರಳ ದೆಖ್ಖಾಳವನು ಮುಡಿಸುವಳು
ಆ ಸತಿಯ ಮನವೊಲಿದು ನಡೆವಳು
ಲೇಸು ಲೇಸೆಂದೆನಿಸಿ ಬಾಳುವ
ಭಾಷೆಯನು ಸಲಿಸುತ್ತಲಿರ್ದಳು ಪತಿಗಳಾಜ್ಞೆಯಲಿ ೩೩

ಜವನ ಮಗ ಸನ್ಯಾಸಿ ವೇಷದಿ
ಪವನಸುತ ಬಾಣಸಿನ ಮನೆಯಲಿ
ದಿವಿಜ ರಾಯನ ತನಯನಿರ್ದ ಶಿಖಂಡಿ ವೇಷದಲಿ
ಜವಳಿ ಮಕ್ಕಳು ತುರಗ ಗೋವ್ರಜ
ನಿವಹರಾದರು ಕಮಲಮುಖಿ ಕಾ
ಲವನು ಕಳೆದಳು ರಾಯನೊಲುಮೆಯ ಕೆಳದಿಯರ ಕೂಡೆ ೩೪

ಎರಡನೆಯ ಸಂಧಿ

ಸೂ. ಕುಸುಮಶರನುರವಣೆಯ ಗಾಯದ
ಲೆಸುಗೆವಡೆದನು ಕೀಚಕನು ತ
ನ್ನಸುವಿನಳತೆಯ ನೋಡದೆಯೆ ತುಡುಕಿದನು ದ್ರೌಪದಿಯ

ಕೇಳು ಜನಮೇಜಯ ಧರಿತ್ರೀ
ಪಾಲ ನಿಮ್ಮಯ ಪೂರ್ವ ಪೃಥ್ವೀ
ಪಾಲರಿದ್ದರು ಗುಪುತದಿಂದ ವಿರಾಟ ನಗರಿಯಲಿ
ಕಾಲ ಸವೆದುದು ಹತ್ತು ತಿಂಗಳ
ಮೇಲೆ ಮತ್ತೊಂದತಿಶಯೋಕ್ತಿಯ
ನಾಲಿಸೈ ವಿಸ್ತರದೊಳರುಪುವೆನೆಂದನಾ ಮುನಿಪ ೧

ಆ ವಿರಾಟನ ರಾಜಧಾನಿಯೊ
ಳೀ ವಿಳಾಸದಿ ಮುಸುಕಿ ತಾವ್ ಪರ
ಸೇವೆಯಲಿ ಪಾಂಡವರು ಕಳೆದರು ಹತ್ತು ಮಾಸವನು
ರಾವಣನು ಮುನ್ನಂದು ಸೀತಾ
ದೇವಿಗಳುಪಿದ ಕಥೆಯವೋಲ್ ಸಂ
ಭಾವಿಸಿದ ಕೀಚಕ ವಿಡಂಬವ ಕೇಳು ಭೂಪಾಲ ೨

ಒಂದು ದಿವಸ ವಿರಾಟನರಸಿಯು
ಮಂದಿರಕ್ಕೋಲೈಸಲೆದ್ದೈ
ತಂದನಾಕೆಯ ತಮ್ಮ ಕೀಚಕನತುಳ ಭುಜಬಲನು
ಹಿಂದೆ ಮುಂದಿಕ್ಕೆಲದ ಸತಿಯರ
ಸಂದಣಿಯ ಮಧ್ಯದಲಿ ಮೆರೆವರ
ವಿಂದವದನೆಯ ಕಂಡು ಕಾಣಿಕೆಗೊಟ್ಟು ಪೊಡಮಟ್ಟ ೩

ಅನುಜನನು ತೆಗೆದಪ್ಪಿ ಸಿಂಹಾ
ಸನದ ಕೆಲದಲಿ ಕುಳ್ಳಿರಿಸಿ ಮನ
ದಣಿಯಲಂಗನೆ ಮನ್ನಿಸಿದಳೈ ತತ್ಸಹೋದರನ
ತನುಪುಳಕ ತಲೆದೋರಲವನು
ಬ್ಬಿನಲಿ ಸತ್ಕೃತನಾಗಿ ಕಮಳಾ
ನನೆಯರನು ಕಂಡನು ಸುದೇಷ್ಣೆಯ ಮೇಳವಬಲೆಯರ ೪

ಅವರ ಮಧ್ಯದಲಮಲ ತಾರಾ
ನಿವಹದಲಿ ರೋಹಿಣಿಯವೋಲ್ ಸುರ
ಯುವತಿಯರಲೂರ್ವಶಿಯವೋಲ್ ನದಿಗಳೊಳು ಜಾಹ್ನವಿಯು
ಅವಯವದ ಪರಿಮಳದ ಪಸರಕೆ
ಕವಿವ ತುಂಬಿಯ ಸಾರ ಸಂಗೀ
ತವನು ಕೇಳುತ ಕಂಡನವ ಪಾಂಚಾಲ ನಂದನೆಯ ೫

ಮೊದಲೊಳವನವಳಂಗವಟ್ಟವ
ನೊದವಿ ನೋಡಿದೊಡಲ್ಲಿಯೇ ಗಾ
ಢದಲಿ ನಟ್ಟವು ಕೀಳಲರಿದಾಯ್ತಾಲಿಗಳನಲುಗಿ
ಮದನ ಮಸೆದೋರಿದನು ಹೂಗಣೆ
ಹೃದಯವನು ತಾಗಿದುದು ಹರ ಹರ
ಹೆದರಿದನು ಹಮ್ಮೈಸಿದನು ಖಳನೊಂದು ನಿಮಿಷದಲಿ ೬

ನಿಂದು ನೋಡಿದ ದ್ರೌಪದಿಯ ಮೊಗ
ದಂದವನು ಕಂಡಾಗ ಕೀಚಕ
ನೊಂದನೆನೆ ಮೊಗ ತೆಗೆಯಲೆಚ್ಚನು ಕಾಮ ಕೈಗೂಡಿ
ಅಂದು ಬೆರಗಾದನು ವಿಳಾಸಿನಿ
ಯಿಂದು ತಳೆದಳು ಮನವನಿವಳಾ
ರೆಂದು ಭಾವಿಸಿ ಚಾಚಿದನು ಕದಪಿನಲಿ ಕರತಳವ ೭

ತಿಳಿಯಿವಳು ಮೂಜಗವ ಮೋಹಿಪ
ತಿಲಕವೋ ಕಾಮಂಗೆ ಕಟ್ಟಿದ
ಕಳನ ಭಾಷೆಗೆ ನಿಂದ ಮಾಸಾಳೋ ಮಹಾದೇವ
ಕೊಲೆಗಡಿಗ ಕಂದರ್ಪಕನ ಕೂ
ರಲಗೊ ಮದನನ ಸೊಕ್ಕಿದಾನೆಯೊ
ನಳಿನಮುಖಿಯಿವಳಾರ ಸತಿಯೆಂದಳುಪಿ ನೋಡಿದನು ೮

ಜಗವ ಕೆಡಹಲು ಜಲಜವಿಶಿಖನು
ಬಿಗಿದ ಬಲೆಯಿವಳಲ್ಲಲೇ ಯೋ
ಗಿಗಳ ಯತಿಗಳನೆಸಲು ಕಾಮನು ಮಸೆದ ಕೂರಲಗು
ಮುಗುದನಾದನು ಕಾಮನಂಬುಗ
ಳುಗಿದವೆದೆಯಲಿ ನಟ್ಟ ದೃಷ್ಟಿಯ
ತೆಗೆಯಲಾರದೆ ಸೋತು ಕೀಚಕ ಪಾತಕವ ನೆನೆದ ೯

ಸೂರೆವೋಯಿತು ಚಿತ್ತ ಕಂಗಳು
ಮಾರುವೋದವು ಖಳನ ಧೈರ್ಯವು
ತೂರಿ ಪೋದುದು ಕರಣದಲಿ ಕಳವಳದ ಬಿ[illegible]ಯ್ತು
ಮೀರಿ ಪೊಗುಮಂಗಜನ ಶರದಲಿ
ದೋರುವೋಯಿತು ಹೃದಯ ಕಣ್ಣೆರಿ
ಗಾರೆಯಿವಳಾರೆನುತ ಗಜಬಜಿಸಿದನು ನಿಮಿಷದಲಿ ೧೦

ರತಿಯ ಚೆಲುವಂತಿರಲಿ ಸಿರಿ ಪಾ
ರ್ವತಿಯ ರೂಪಂತಿರಲಿ ಬೊಮ್ಮನ
ಸತಿಯ ಸೊಬಗಂತಿರಲಿಯೀ ಬಾಲಕಿಯ ರೂಪಿಂಗೆ
ಪ್ರತಿಯ ಕಾಣೆನು ಪಾಂಡವರ ದುರು
ಪತಿಯ ರೂಪಿಂಗೈದು ಮಡಿಯೀ
ಸತಿಯ ವಿಭ್ರಮವೈದಿತೆನ್ನಯ ಮನವನೆನುತಿರ್ದ ೧೧

ಅರಿವು ತಲೆಕೆಳಗಾಯ್ತು ಧೈರ್ಯದ
ನಿರಿಗೆ ನಗೆಗೆಡೆಯಾಯ್ತು ಲಜ್ಜೆಯ
ಪೊರಿಗೆ ಬರಿದೊರೆಯಾಯ್ತು ಕರಿವೊಳೆಯೋಯ್ತು ಭಯ ಬೀಜ
ಮರವೆ ಗರಿಗಟ್ಟಿತು ಮನೋಭವ
ನಿರಿಗೆಲಸ ಬಲುಹಾಯ್ತು ಹೊಗಳುವ
ಡರಿಯೆನಾತನ ತನುವಿನಂತಸ್ತಾಪದೇಳ್ಗೆಯನು ೧೨

ಬೀಳುಗೊಂಡುದು ಲಜ್ಜೆ ಮಹಿಮೆಯ
ಕೀಲು ಕಳಚಿತು ದ್ರುಪದ ತನುಜೆಯ
ನಾಲಿಯಲಿ ನುಂಗಿದನು ಮನದಲಿ ಸತಿಯ ಸೆರೆವಿಡಿದು
ಕೇಳು ಬಿನ್ನಹವಕ್ಕ ನಿಮ್ಮಡಿ
ಯೋಲೆಕಾತಿಯರೊಳಗೆ ಮಿಾಟಿನ
ಮೇಲುಗೈಯಿವಳಾವಳೆಂದಗ್ರಜೆಯ ಬೆಸಗೊಂಡ ೧೩

ಈಕೆ ಗಂಧರ್ವರ ರಮಣಿ ನ
ಮ್ಮಾಕೆಯಾಗಿರೆ ಮಾನ್ಯವೃತ್ತಿಯೊ
ಳೀಕೆಯನು ಸಲಹುವೆವು ಬಲ್ಲಿದರಿವಳ ವಲ್ಲಭರು
ಸಾಕು ಬಿಡಾರಕ್ಕೆ ನೀ ಹೋ
ಗೀಕೆ ನಿನಗಹಳಲ್ಲ ನಿಂದಿರು
ಕಾಕನಾಡದಿರೆನುತ ಬೀಳ್ಕೊಟ್ಟಳು ನಿಜಾನುಜನ ೧೪

ತಾರಿತಂತಃಕರಣ ಕಾಮನ
ಕೂರುಗಣೆ ಕಾಲಿಕ್ಕಿದವು ಮನ
ದೇರು ಮುಚ್ಚಿತು ದುಗುಡ ಬಲಿದುದು ಮುಸುಕು ಮೋರೆಯಲಿ
ಮೀರಿ ನಿಜಮಂದಿರಕೆ ಢಗೆ ಮೈ
ದೋರೆ ಬಂದನು ಮರುದಿವಸ ತಲೆ
ಮಾರಿ ಕಂಡನು ದ್ರೌಪದಿಯನರಮನೆಯ ಬಾಗಿಲಲಿ ೧೫

ಕಳುಹಿದನು ತನ್ನೊಡನೆ ಬಹ
ಗಾವಳಿಯ ಪರಿವಾರವನು ತನ್ನಯ
ಬಳಿಯ ಹಡಪದ ಬಾಲಕನ ಹಿಂದಿಕ್ಕಿ ನಡೆತಂದು
ಒಲಿದು ಸಿಂಹದ ಸತಿಗೆ ನರಿ ಮನ
ವಳುಪುವಂತಿರೆ ಗರುಡನರಸಿಗೆ
ನಲಿದು ಫಣಿ ಬಯಸುವವೊಲೈದಿದ ಬಾಲಕಿಯ ಬಳಿಗೆ ೧೬

ಖಳನ ಮನದಿಂಗಿತವನಾಗಳೆ
ತಿಳಿದು ಕಾಮಿನಿ ಬೆದರಿದಳು ಕಳ
ವಳಿಗ ಸೋತನು ಕೆಟ್ಟೆನೆಂದಳು ತನ್ನ ಮನದೊಳಗೆ
ತೊಲಗಿ ಹಿಂದಡಿಯಿಡಲು ಕೀಚಕ
ನಳುಕದೈತಂದಬುಜವದನೆಯ
ಬಳಿಗೆ ಬಂದನು ನುಡಿಸಲಾಗದೆ ತರಳೆ ನೀನೆಂದ ೧೭

ಎಲೆ ಮರುಳೆ ಬೇಡಳುಪದಿರು ಕೂ
ರಲಗ ಕೊರಳಿಗೆ ಬಯಸದಿರು ಕಳ
ವಳಿಸದಿರು ಕೈಯೊಡನೆ ನಿನ್ನರಮನೆಗೆ ತೆರಳುವುದು
ಸುಲಭೆ ನಾ ನಿನಗಲ್ಲ ನಿನ್ನನು
ಕೆಲರು ನಗುವರು ಪರದ ಸದ್ಗತಿ
ತೊಲಗುವುದು ಬೇಡಕಟಯೆಂದಳು ಪಾಂಡವರ ರಾಣಿ ೧೮

ನಿಲ್ಲೆಲೆಗೆ ಸೈರಂಧ್ರಿ ಕಾಮನ
ಬಲ್ಲೆಹದ ಬಲುಗಾಯ ತಾಗಿತು
ಬಲ್ಲ ನೀನೌಷಧಿಯ ರಕ್ಷಿಸಿಕೊಂಬುದೆನ್ನೊಡಲ
ಮೆಲ್ಲನಡಿಯಿಡು ಮಾತ ಮನ್ನಿಸು
ಚೆಲ್ಲೆಗಂಗಳನೆನ್ನ ಮುಖದಲಿ
ಚೆಲ್ಲಿ ಸಪ್ರಾಣಿಸಲು ಬೇಹುದು ವಿಗತಜೀವನವ ೧೯

ಎಲೆಗೆ ಪಾತಕಿ ನಿನ್ನ ಕಣ್ಣಿಂ
ಬಲಗಿನಲಿ ತನ್ನೆದೆಯ ನೋಯಿಸಿ
ತೊಲಗಬಹುದೇ ಕರುಣವಿಲ್ಲವೆ ನಿನ್ನ ಮನದೊಳಗೆ
ಒಲಿದು ಬಂದೆನು ಕಾಮನೂಳಿಗ
ಬಲುಹು ಎನ್ನಯ ಭಯವ ತಗ್ಗಿಸಿ
ತಲೆಯ ಕಾಯಲು ಬೇಕೆನುತ ಕೀಚಕನು ಕೈಮುಗಿದ ೨೦

ಪರರ ಸತಿಗಳುಪಿದೊಡೆ ಪಾತಕ
ದೊರಕುವುದು ನಿಜಲಕ್ಷ್ಮಿ ತೊಲಗುಗು
ಧರೆಯೊಳಗ್ಗದ ಕೀರ್ತಿ ಮಾಸುಂಗು ಗತಿಗೆ ಕೇಡಹುದು
ಕೊರಳು ಹಲವಾದಸುರನಂತಕ
ಪುರವನೈದಿದ ಕಥೆಯ ನೀ ಕೇ
ಳ್ದರಿಯಲಾ ಕಡುಪಾಪಿ ಹೋಗೆಂದಳು ಸರೋಜಮುಖಿ ೨೧

ಮೇಲೆ ಸದ್ಗತಿ ಬೆಂದು ಹೋಗಲಿ
ಕಾಲಸರ್ಪನ ತರಲಿ ಬಂಧುಗ
ಳೇಳಿಸಲಿ ತನ್ನವರು ತೊಲಗಲಿ ರಾಣಿಯರು ಬಿಡಲಿ
ಬಾಲೆ ನಿನಗಾನೊಲಿದೆ ಕಾಮನ
ಕೋಲು ಎನ್ನನು ಮರಳಲೀಯದು
ಲೋಲಲೋಚನೆ ಬಿರುಬ ನುಡಿಯದೆ ತನ್ನನುಳುಹೆಂದ ೨೨

ಎಳೆನಗೆಯ ಬೆಳುದಿಂಗಳನು ನೀ
ತಳಿತು ತಾಪವ ಕೆಡಿಸು ಮಧುರದ
ಮೆಲುನುಡಿಯ ಸುಧೆಯಿಂದ ತೃಷ್ಣೆಯನಕಟ ಪರಿಹರಿಸು
ಅಳಿಮನದ ಬಡತನವ ನಿನ್ನಯ
ಕಳಶ ಕುಚ ಲಕ್ಷ್ಮಿಯಲಿ ಕಳೆ ಮನ
ಮೊಳೆಹತ್ತಲು ಕಿಚ್ಚುಟಿಸುವುದು ಕಾಂತೆ ಕೇಳೆಂದ ೨೩

ಕೇಳಿ ಕಿವಿ ಮುಚ್ಚಿದಳು ತನ್ನಯ
ಮೇಳದೈವರ ನೆನೆದು ಹರ ಹರ
ಶೂಲಪಾಣಿ ಮುಕುಂದಯೆನುತವೆ ರವಿಯನೀಕ್ಷಿಸುತ
ಕಾಳು ಮೂಳನಲಾ ಖಳಾಗ್ರಣಿ
ಮೇಲುಗಾಣನಲಾ ಮದಾಂಧನ
ಸೋಲಿಸುವರಾರುಂಟೆನುತ ತಲೆ ಬಾಗಿದಳು ತರಳೆ ೨೪

ಎಲೆ ದುರಾತ್ಮ ಮಹಾಪರಾಧವ
ಬಳಸುವರೆ ಬಯಲಿಂಗೆ ನಿನ್ನಯ
ಕುಲದ ಬೇರನು ಕೊಯ್ವರೇ ಬಹುದಾವುದಿದರಿಂದ
ಹಳಿವು ಹೊದ್ದದೆ ಹೆತ್ತವರು ಮ
ಕ್ಕಳುಗಳೆಂಬೀ ಬದುಕ ಮಾಣದೆ
ಯೆಳಸಿಕೊಂಬಂತಾಯಿತೆಂದಳು ಪಾಂಡವರ ರಾಣಿ ೨೫

ಕಾತರಿಸದಿರು ಮಂದಿವಾಳದ
ಮಾತುಗಳು ಸಾಕಕಟ ತೊಲಗೈ
ಸೋತಡೇನದು ಮನುಜ ಧರ್ಮದ ಚಿತ್ತಚಪಲವಲ
ಈ ತತುಕ್ಷಣ ಜಾರು ಕೇಳಿದ
ಡಾತಗಳು ಸೈರಿಸರು ದೇವ
ವ್ರಾತದಲಿ ಬಲ್ಲಿದರು ತನ್ನವರೆಂದಳಿಂದುಮುಖಿ ೨೬

ಸಾವು ತಪ್ಪದು ತನಗೆ ಕಾಮನ
ಡಾವರವು ಘನ ನಿನ್ನ ನೆರೆದೇ
ಸಾವೆನಲ್ಲದೆ ಕಾಮನಂಬಿಂಗೊಡಲನೊಪ್ಪಿಸೆನು
ಭಾವೆ ನೂಕದಿರೆನ್ನ ವರ ರಾ
ಜೀವಮುಖಿ ಕೃಪೆ ಮಾಡು ತನ್ನಯ
ಜೀವನವನುಳುಹೆನುತ ಕಮಲಾನನೆಗೆ ಕೈಮುಗಿದ ೨೭

ಮರುಳುತನ ಬೇಡೆಲವೊ ಗಂಧ
ರ್ವರಿಗೆ ಹೆಂಡತಿ ತಾನು ನಿನ್ನಯ
ದುರುಳತನವನು ಸೈರಿಸರು ತನ್ನವರು ಬಲ್ಲಿದರು
ಸೊರಹದಿರು ಅಪಕೀರ್ತಿನಾರಿಯ
ನೆನೆಯದಿರು ನೀ ನಿನ್ನ ನಿಳಯಕೆ
ಮರಳುವುದು ಲೇಸೆಂದು ತೃಣವನು ಹಿಡಿದು ಸಾರಿದಳು ೨೮

ದ್ರೌಪದಿಗೆ ಖಳ ನುಡಿದನೆನ್ನಾ
ಟೋಪವನು ನೀನರಿಯೆ ಬಡವರ
ಕೋಪವೌಡಿಗೆ ಮೃತ್ಯು ನಿನ್ನವರೆನ್ನದೇಗುವರು
ಆಪೆನವರಂತಿರಲಿ ನೀನೆನ
ಗೋಪಳಾದರೆ ಸಾಕು ಮಲೆತಡೆ
ಯಾ ಪಿನಾಕಿಗೆ ತೆರಳುವೆನೆ ಬಳಿಕಲ್ಲಿ ನೋಡೆಂದ ೨೯

ಹುಳುಕನಲ್ಲಾ ತುಂಬಿ ಕೋಗಿಲೆ
ಗಳಹನಲ್ಲಾ ಶಶಿ ವಸಂತನ
ಬಲುಹು ಮಾನ್ಯರನರಿಯದೇ ತಂಗಾಳಿ ಧಾರ್ಮಿಕನೆ
ಖಳನಲಾ ಮಾಕಂದ ಲೋಕದ
ಕೊಲೆಗಡಿಗನಲ್ಲಾ ಮನೋಭವ
ನಿಳಿಕೆಗೊಂಬರೆ ಪಾಪಿಯೊಲಿಯದೆ ಕೊಲುವರೇಯೆಂದ ೩೦

ಒಲಿದು ನಿನ್ನನು ನಾವು ಕೊಲ್ಲೆವು
ಕೊಲುವ ಸುಭಟರು ಬೇರೆ ಬಯಲಿಗೆ
ಹಲವ ಗಳಹಿದರೇನು ಫಲವಿಲ್ಲಕಟ ಸಾರಿದೆನು
ತಿಳುಪಿದೊಡೆಯೆನ್ನವರು ನಿನ್ನಯ
ತಲೆಯನರಿದೂ ತುಷ್ಟರಾಗರು
ಕಲಕುವರು ನಿನ್ನನ್ವಯಾಬ್ಧಿಯನೆಂದಳಿಂದುಮುಖಿ ೩೧

ಕುಲದೊಳೊಬ್ಬನು ಜನಿಸಿ ವಂಶವ
ನಳಿದನಕಟಕಟೆಂಬ ದುರ್ಯಶ
ವುಳಿವುದಲ್ಲದೆ ಲೇಸಗಾಣೆನು ಬರಿದೆ ಗಳಹದಿರು
ಕೊಲೆಗಡಿಕೆಯೋ ಪಾಪಿ ಹೆಂಗಸು
ಹಲಬರನು ಕೊಲಿಸಿದಳು ಸುಡಲೆಂ
ದಳಲುವರು ನಿನ್ನಖಿಳ ರಾಣಿಯರೆಂದಳಿಂದುಮುಖಿ ೩೨

ಹರಿ ವಿರಿಂಚಿಗಳಾದೊಡೆಯು ಸಂ
ಗರದೊಳೆನಗಿದಿರಿಲ್ಲ ಮರುಳೇ
ತರುಣಿ ನಿನ್ನೊಡನೇನು ತೋರಾ ನಿನ್ನ ವಲ್ಲಭರ
ಪರಸತಿಯು ಸೆರೆಗೈಯೆ ಮುತ್ತಿತು
ನೆರೆದು ಕೋಡಗವಿಂಡು ಸುಭಟನು
ಸರಿದನಂತಕ ನಗರಿಗರಿಯಾಯ್ತೆಂದಳಿಂದುಮುಖಿ ೩೩

ನೀರೆ ನೂಕದಿರೆನ್ನ ಮನ ಮು
ಮ್ಮಾರುಹೋದುದು ನೀನು ಚಿತ್ತವ
ಸೂರೆಗೊಂಡೀ ಮದನನಂಬಿಂಗೊಡಲ ಹೂಣಿಸುವೆ
ಜಾರದಿರುಯೆನ್ನೆದೆಗೆ ತಾಪವ
ಬೀರದಿರು ಕಾರುಣ್ಯವನು ಕೈ
ದೋರೆನಗೆ ಕಮಲಾಕ್ಷಿ ಮರಣವ ಮಾಣಿಸಕಟೆಂದ ೩೪

ಮರುಳೆ ಮನದ ವಿಕಾರ ಮಾರಿಯು
ಸರಸವಾಡುವರುಂಟೆ ಮೃತ್ಯುವ
ನೆರೆವರೇ ದಳ್ಳುರಿಯ ಪ್ರತಿಮೆಯನಪ್ಪುವರೆ ಬಯಸಿ
ಸರಳಕಂಗೈಸುವರೆ ಪಾಪಿಯೆ
ಮರಳು ನಿನ್ನರಮನೆಗೆಯೆನ್ನಯ
ಗರುವ ಗಂಡರು ಕಡಿದು ಹರಹುವರೆಂದಳಿಂದುಮುಖಿ ೩೫

ತೋಳ ತೆಕ್ಕೆಯ ತೊಡಿಸಿ ಕಾಮನ
ಕೋಲ ತಪ್ಪಿಸು ಖಳನ ಕಗ್ಗೊಲೆ
ಯೂಳಿಗವ ಕೇಳುಸುರದಿಹರೆ ಸಮರ್ಥರಾದವರು
ಸೋಲಿಸಿದ ಗೆಲವಿಂದ ಬಲು ಮಾ
ತಾಳಿಯಿವನೆನ್ನದಿರು ಹರಣದ
ಮೇಲೆ ಸರಸವೆ ಕಾಯಬೇಹುದು ಕಾಂತೆ ಕೇಳೆಂದ ೩೬

ಉಳಿದ ತನ್ನರಸಿಯರ ನಿನ್ನಯ
ಬಳಿಯ ತೊತ್ತಿರ ಮಾಡುವೆನು ಕೇ
ಳೆಲೆಗೆ ತನ್ನೊಡಲಿಂಗೆಯೊಡೆತನ ನಿನದಾಗಿರಲಿ
ಲಲನೆ ನಿನ್ನೊಳು ನಟ್ಟ ಲೋಚನ
ತೊಲಗಲಾರದು ತನ್ನ ಕಾಯುವ
ಬಳಲಿಸದೆ ಕೃಪೆ ಮಾಡಬೇಹುದೆನುತ್ತ ಕೈಮುಗಿದ ೩೭

ನ್ಯಾಯಂವನು ಮಿಗೆ ಗೆಲುವುದೀಯ
ನ್ಯಾಯುವಧಮನ ಧರ್ಮ ಮಾರ್ಗ
ಸ್ಥಾಯಿಗಳ ತಿಮಿರಕ್ಕೆ ಭಾಸ್ಕರಗಾವುದಂತರವು
ಕಾಯುರೆನ್ನವರವರ ಕೈಗುಣ
ದಾಯುತವ ಬಲ್ಲವರೆ ಬಲ್ಲರು
ನಾಯಿ ಸಿಂಹಕ್ಕಿದಿರೆ ಫಡ ಹೋಗೆಂದು ತಿರುಗಿದಳು ೩೮

ಹೂಣೆ ಹೊಕ್ಕುದು ವಿರಹದಾಸೆಯ
ಕಾಣೆನಾಕೆಯ ಮಾತಿನಲಿ ಮುಂ
ಗಾಣಿಕೆಯಲೇ ಸೂರೆ ಹೋದುದು ಮನದ ಸರ್ವಸ್ವ
ತ್ರಾಣ ಸಡಿಲಿತು ಬುದ್ಧಿ ಕದಡಿ ಕೃ
ಪಾಣಪಾಣಿ ವಿರಾಟ ರಾಯನ
ರಾಣಿಯುರಮನೆಗೈದಿದನು ಕಂಡನು ನಿಜಾಗ್ರಜೆಯಂ ೩೯

ಹಣೆಯುನಂಘ್ರಿಗೆ ಚಾಚಲೆತ್ತಿದ
ಳಣಕಿಗನ ತೆಗೆದಪ್ಪಿ ಮದವಾ
ರಣನೆ ಕುಳ್ಳಿರೆನುತ್ತ ನೋಡಿದಳಾ ಸಹೋದರನ
ಹೆಣ ಮುಸುಡು ಬಿದ್ದಿದೆ ಲತಾಂಗಿಯ
ಕೆಣಕಿದನೊ ಕಡುಪಾಪಿ ವಂಶವ
ಹಣಿದವಾಡದೆ ಮಾಣನೇಗುವೆನೆನುತ ಮರುಗಿದಳು ೪೦

ಅಳುಕಿತಗ್ಗದ ಮಹಿಮೆ ಮುಸುಡಿನ
ಬೆಳಕು ಕಂದಿತು ಬಹಳ ಚಿಂತಾ
ಜಲಧಿಯೊಳಗದ್ದಂತೆ ಸೊಂಪಡಗಿತು ನಿಜಾಕಾರ
ಕುಲಶಿರೋಮಣಿ ಹೇಳು ಚಿತ್ತದ
ನೆಲೆಯನೆನೆ ನಸುನಾಚಿ ಮದನನ
ಹಿಳುಕು ಸುಮತಿಯ ಸೀಳೆ ಬಳಿಕಿಂತೆಂದನವ ನಗುತ ೪೧

ಬೇರೆ ಬಿನ್ನಹವೇನು ಸತಿಯರ
ನೂರು ಮಡಿ ಚೆಲುವಿನಲಿ ಚಿತ್ತವ
ಸೂರೆಗೊಂಡಿಹಳವಳು ನಿನ್ನೋಲಗದ ಸತಿಯರಲಿ
ಮಾರಿದಳು ಮದನಂಗೆ ಜೀವಿಸ
ಲಾರೆನಾಕೆಯನೊಳಗು ಮಾಡಿಸಿ
ತೋರಿದೊಡೆ ತನ್ನೊಡಲೊಳಸುವಿಂಗಿಹುದು ನಿರ್ವಾಹ ೪೨

ಕೀರ್ತಿಲತೆ ಕುಡಿಯೊಣಗಿತ್ತೈ ಮದ
ನಾರ್ತನಾದೈ ಕುಲಕೆ ಕಾಲನ
ಮೂರ್ತಿ ನೀನವತರಿಸಿದೈ ಸಂಹರಿಸಿದೈ ಕುಲವ
ಸ್ಫೂರ್ತಿಗೆಡೆ ಮನುಜರಿಗೆ ರಾವಣ
ನಾರ್ತಿಯಪ್ಪುದು ಅರಿಯಲಾ ಕಡು
ಧೂರ್ತತನಕಂಜುವೆನೆನುತ ನಡುಗಿದಳು ನಳಿನಾಕ್ಷಿ ೪೩

ಬೇಟವೇ ಪರವಧುವಿನಲಿ ಕೈ
ಮಾಟವೇ ಪರವಿತ್ತದಲಿ ತೆಗೆ
ದೋಟವೇ ಕದನದಲಿ ಗುಣವೇ ರಾಜಪುತ್ರರಿಗೆ
ಆಟವಿಕರೊಡನಾಡಿ ಕಲಿತು ವಿ
ರಾಟನನು ಕೊಲಲೆಣಿಸಿದೈ ನಿ
ನ್ನಾಟಕಂಜುವೆನೆನುತ ಮುಖದಿರುಹಿದಳು ತರಲಾಕ್ಷಿ ೪೪

ಅವಳ ಗಂಡರು ಸುರರು ಸುರರಿಗೆ
ನವಗದಾವಂತರವು ಮುಳಿದೊಡೆ
ದಿವಿಜ ದಳಕಿದಿರಾರು ನಮ್ಮನದಾರು ಕಾವವರು
ಅವಳ ತೊಡಕೇ ಜೀವ ಸಕೀಚಕರ
ನಿವಹದಲಿ ನೀನಾರ ಬಯಸಿದ
ಡವಳ ನಾ ಮುಂದಿಟ್ಟು ಮದುವೆಯನೊಲಿದು ಮಾಡುವೆನು ೪೫

ಅಕ್ಕ ಮರುಳಾ ಚಿತ್ರವವಳಲಿ
ಸಿಕ್ಕಿ ಜೀರ್ವರಿಯಿತ್ತು ಬರಿದೇ
ಮಿಕ್ಕ ಡಿಂಬಕೆ ಮದುವೆಯುಂಟೇ ಮನವ ಬೇರಿರಿಸಿ
ಮುಕ್ಕಳಾಟಿಕೆಯಾದಡಾಗಲಿ
ತಕ್ಕರಲ್ಲೆಂದೆನಲಿ ಸಲಹುವ
ಡಕ್ಕ ಸೈರಂಧ್ರಿಯನು ಸೇರಿಸಬೇಕು ತನಗೆಂದ ೪೬

ಸೊಗಸದಿತರರ ಮಾತು ಕಣ್ಣುಗ
ಳೊಗಡಿಸವು ಮಿಕ್ಕವರ ರೂಹನು
ಹಗೆಗಳಾಗಿಹವುಳಿದವರ ನಾಮಂಗಳು ನಾಲಿಗೆಗೆ
ಸೆಗಳಿಕೆಯ ಸಸಿಯಾದೆನೆನ್ನಯ
ಬಗೆಯ ಸಲಿಸೌ ಹರಿದ ಕರುಳಿನ
ಮೃಗದ ಮರಿಯನು ಸಲಹಬೇಕೆಂದೆರಗಿದನು ಪದಕೆ ೪೭

ಅಲಿ ನೀರೇರಿದವು ತಮ್ಮನ
ಮೇಲೆ ತಳಿತುದು ಮೋಹ ಕಾಲನ
ಪಾಳಯಕೆ ಕೈಗೊಟ್ಟಳಂಗನೆ ನೆಗಹಿದಳು ಖಳನ
ಏಳು ಭವನಕೆ ಹೋಗು ತರುಣಿಯ
ನಾಳೆ ನಾ ಕಳುಹುವೆನು ಪರಸತಿ
ಮೇಳ ಲೇಸಲ್ಲೆನುತ ಬೀಳ್ಕೊಟ್ಟಳು ನಿಜಾನುಜನ ೪೮

ಮನದೊಳಗೆ ಗುಡಿಗಟ್ಟಿದನು ಮಾ
ನಿನಿಯ ಕರುಣಾಪಾಂಗ ರಸಭಾ
ಜನವು ಪುಣ್ಯವಲಾಯೆನುತ ಬೀಳ್ಕೊಂಡನಗ್ರಜೆಯ
ಮನದೊಳೊದವಿದ ಮರುಳುತನದು
ಬ್ಬಿನಲಿ ಹೊಕ್ಕನು ಮನೆಯನಿತ್ತಲು
ದಿನಕರಂಗಾಯಿತ್ತು ಬೀಡಸ್ತಾಚಲಾದ್ರಿಯಲಿ ೪೯

ವರ ದಿಗಂಗನೆಯಿಟ್ಟ ಚಂದನ
ತಿಲಕವೋ ಮನುಮಥನ ರಾಣಿಯ
ಕರದಲಿಹ ಕನ್ನಡಿಯೊ ಮದನನ ಬಿರುದಿನೊಡ್ಡಣವೊ
ಸುರತ ವಿರಹಿಯ ಸುಡುವ ಕೆಂಡದ
ದೊರಳಿಯೋ ಹೇಳೆನಲು ಮಿಗೆ ಹಿಮ
ಕರನು ಜನಿಸಿದ ರಜನಿ ಮಧ್ಯನೊಳವನಿ ತಳತಳಿಸೆ ೫೦

ಬೆಚ್ಚಿದವು ಚಕ್ರಾಂಕಯುಗ ತಾವ್
ಕಚ್ಚಿದವು ಮರಿದುಂಬಿ ಕುಮುದವ
ಮುಚ್ಚಿದವು ಮುಸುಡುಗಳನಂಬುಜರಾಜಿ ತವತವಗೆ
ಹೆಚ್ಚಿದವು ಸಾಗರದ ತೆರೆಗಳು
ಬೆಚ್ಚಿದರು ಜಾರೆಯರು ಚಂದ್ರಮ
ಕಿಚ್ಚನಿಕ್ಕಿದನಕಟ ಸಕಲ ವಿಯೋಗಜನ ಮನಕೆ ೫೧

ಖಳನ ವಿರಹದ ತಾಪದುರಿವೆ
ಗ್ಗಳಿಸೆ ತನ್ನರಮನೆಗೆ ಬಂದನು
ಕಳವಳಿಗ ಹಾಯೆನುತ ಕೆಡೆದನು ತಳಿರ ಹಾಸಿನಲಿ
ನಳಿನವೈರಿಯ ಸುಳಿವು ತನ್ನಯ
ಕೊಲೆಗೆ ಬಂದುದು ಪಾಪಿ ಕಮಲಜ
ಚಲಿತಲೋಚನೆಗೇಕೆ ಮಾಡಿದನಿನಿತು ಚೆಲುವಿಕೆಯ ೫೨

ಹಾಸಿದೆಳೆದಳಿರೊಣಗಿದುವು ಹೊಗೆ
ಸೂಸಿದಾ ಸುಯಿಲಿನಲಿ ಮೆಲ್ಲನೆ
ಬೀಸುತಿಹ ಸುಳಿವಾಳೆಯೆಲೆ ಬಾಡಿದವು ಝಳ ಹೊಯ್ದು
ಆ ಸಸಿಯ ಕೋಗಿಲೆಯ ತುಂಬಿಯ
ನಾ ಸರೋಜವ ಮಲ್ಲಿಗೆಯ ಕೈ
ವೀಸಿದನು ಕುಸುಮಾಸ್ತ್ರ ನೀ ಕೀಚಕನ ಕಗ್ಗೊಲೆಗೆ ೫೩

ಉರಿದುದೊಢಲೊಳು ವೀಳೆಯದ ಕ
ರ್ಪುರದ ಹಳಕುಗಳಮಳ ಗಂಧದ
ಸರಸ ಕರ್ದಮ ಕರಿಕುವರಿದುದು ಪೂಸಿದಂಗದಲಿ
ಹೊರಳೆ ನೀರಿನ ಪೊಟ್ಟಣವು ದ
ಳ್ಳುರಿಯೊಲಾದುದು ಬಲಿದ ಚಂದ್ರಿಕೆ
ಕರಗಿ ಕಡುಗಿದ ತವರವಾದುದು ಕೀಚಕನ ದೆಸೆಗೆ ೫೪

ಪರಿಮಳದಿ ಸುಳಿವಾಲವಟ್ಟದೊ
ಳಿರದೆ ಪೂಸಿದ ಗಂಧ ಕರ್ಪುರ
ವರರೆ ಸೀದವು ಕೀಚಕನ ಕಾಮಾಗ್ನಿ ತಾಪದಲಿ
ಪರಮ ಪಾತಿವ್ರತೆಗಳುಪಿ ತಾನ್
ಹರಣದಾಸೆಯ ಮರೆದು ಪಾತಕ
ಹೊರಳುತಿರ್ದನು ಚಂದ್ರಕಾಂತದ ಮೇಲು ಮಚ್ಚಿನಲಿ ೫೫

ಅರೆಗಳಿಗೆ ಯುಗವಾಗಿ ನೂಕಿದ
ನಿರುಳನುದಯಾಚಲದ ಶಿರದಲಿ
ತರಣಿ ತಲೆದೋರಿದನು ತೊಡೆದನು ಭುವನದಂಧತೆಯ
ಪರಿಮಳವ ಪಾವುಡದಿನಳಿಗಳ
ಕರೆಸಿದವು ತಾವರೆಗಳೆನೆ ಕಾ
ತರ ಲತಾಂಗಿಯ ಸುಯ್ಲು ತಾಗಿತು ಕುಮುದಿನೀಪತಿಗೆ ೫೬

ಮೂರನೆಯ ಸಂಧಿ

ಸೂ. ರಾಯ ಕುರುಬಲ ವಿರಹನಬು
ಜಾಯತಾಕ್ಷಿಯ ಸಲಹಿ ಕೀಚಕ
ರಾಯವಂಶಾರಣ್ಯವನು ಸವರಿದನು ಕಲಿಭೀಮ

ಬಯಸಿದಳು ಮೃತ್ಯುವನು ಕಡು ಪಾ
ಪಿಯ ಮನೋಧರ್ಮವನು ಜನಮೇ
ಜಯ ಮಹೀಪತಿ ಕೇಳು ಪಾಂಚಾಲಿಯನು ಕರಸಿದಳು
ನಯವಿಹೀನೆ ಸುದೇಷ್ಣೆ ಬಂದಾ
ಕೆಯನು ಬೆಸಸಿದಳೆಲೆಗೆ ಅನುಜಾ
ಲಯದಲುತ್ತಮ ಮಧುವ ನೀ ಝಡಿತೆಯಲಿ ತಹುದೆಂದು ೧

ಅಮ್ಮನಲ್ಲಿಗೆ ದೇವಿ ನಿಮ್ಮಯ
ತಮ್ಮ ದುರುಳನು ಲೇಸು ಹೊಲ್ಲೆಹ
ವೆಮ್ಮ ತಾಗುವುದಾತನಳಿದರೆ ಬಳಿಕ ಹಳಿವೆಮಗೆ
ನಿಮ್ಮ ನಾವೋಲೈಸಿ ನಿಮಗೆ ವಿ
ಕರ್ಮವನು ಮಾಡುವದು ನಮಗದು
ಧರ್ಮವಲ್ಲುಳಿದವರ ಕಳುಹುವುದೆಂದಳಿಂದುಮುಖಿ ೨

ಎನಲು ಭುಗಿಲೆಂದಳು ಸುದೇಷ್ಣೆ
ಮನದ ಗರ್ವವ ನುಡಿವೆ ನಿನ್ನಿಂ
ದೆನಗೆ ಮೇಣೆನ್ನವರಿಗುಂಟೇ ಹಾನಿ ಹರಿಬಗಳು
ಅನುಜನಾರೆಂದರಿಯೆ ಸಾಕಾ
ತನ ಸಮೀಪಕೆ ಹೋಗಿ ಬಾ ನಡೆ
ಯೆನಲು ಕೈಕೊಂಡಬಲೆ ಹೊರವಂಟಳು ನಿಜಾಲಯವ ೩

ದೇವಿ ನೇಮಿಸಲರಿಯೆನೆಂದೊಡಿ
ದಾವ ಧರ್ಮವು ಶಿವ ಶಿವೀ ಹದ
ನಾವನವರಿಗೆ ತಹುದು ಬದ್ಧವಿಘಾತಿಯಿದು ಬಲುಹು
ಸೇವಿಸುವದೇ ಕಷ್ಟವೆಂಬುದು
ಕೋವಿದರ ಮತ ಶಿವ ಶಿವಾ ರಾ
ಜೀವಲೋಚನ ಕೃಷ್ಣ ಬಲ್ಲನೆನುತ್ತ ಗಮಿಸಿದಳು ೪

ಹರಿ ಹರಿ ಶ್ರೀಕಾಂತ ದಾನವ
ಹರ ಮುರಾರಿ ಮುಕುಂದ ಗತಿಶೂ
ನ್ಯರಿಗೆ ನೀನೇ ಗತಿಯಲೈ ಗರುವಾಯಿಗೆಟ್ಟೆನಲೈ
ಕುರುಕುಲಾಗ್ರಣಿ ಸೆಳೆದ ವಸ್ತ್ರಾ
ಕರುಷಣದ ಭಯ ಹತ್ತೆ ಬಂದಿದೆ
ಕರುಣಿ ನೀನೇ ಬಲ್ಲೆಯೆನುತಡಿಯಿಟ್ಟಳಬುಜಾಕ್ಷಿ ೫

ಸುರಪ ಶಿಖಿ ಯಮ ನಿರುತಿ ವರುಣಾ
ದ್ಯರಿಗೆ ವಂದಿಸಿ ಕಣ್ಣೆವೆಯ ಬಿಗಿ
ದರೆಗಳಿಗೆ ನಿಂದಬುಜಮಿತ್ರನ ಭಜಿಸಿ ಕಂದೆರೆಯೆ
ಮುರಿವ ದೈತ್ಯನ ಕಾಹ ಕೊಟ್ಟನು
ತರಣಿ ತರುಣಿಗೆ ಮಂದ ಮಂದೋ
ತ್ತರದ ಗಮನದಲಬಲೆ ಬಂದಳು ಕೀಚಕನ ಮನೆಗೆ ೬

ಚಾರು ನೂಪುರ ಝಣರ್ಝಣದ ಝೇಂ
ಕಾರ ರವದುಬ್ಬಿನಲಿ ಭವನ ಮ
ಯೂರ ಕುಣಿದವು ವರಕಟಾಕ್ಷದ ಮಿಂಚು ಥಳಥಳಿಸೆ
ಆರು ಹೊಗಳುವರಂಗವಟ್ಟದ
ಸೌರಭದ ಭಾರಣೆಗೆ ತುಂಬಿಯ
ಸಾರ ಕಟ್ಟಿತು ಬಂದಳಂಗನೆ ಕೀಚಕಾಲಯಕೆ ೭

ಮನುಮಥನ ಮದದಾನೆ ಕಂದ
ರ್ಪನ ಮಹಾ ಮಂತ್ರಾಧಿದೇವತೆ
ಜನವು ಮರುಳಹ ಮದ್ದು ಸಂಸೃತಿಸುಖದ ಸಾಕಾರ
ಮನಸಿಜನ ಮಸೆದಲಗು ಮುನಿ ಮೋ
ಹನತಿಲಕ ಲಾವಣ್ಯ ಸಾಗರ
ಜನಿತ ಲಕ್ಷ್ಮೀಲತಾಂಗಿ ಬಂದಳು ಕೀಚಕನ ಮನೆಗೆ ೮

ಕುಡಿತೆಗಂಗಳ ಚಪಲೆ ಯುಂಗುರ
ವಿಡಿಯ ನಡುವಿನ ನೀರೆ ಹಂಸೆಯ
ನಡೆಯ ಗಮನದ ಮೌಳಿಕಾತಿ ಪಯೋಜ ಪರಿಮಳದ
ಕಡು ಚೆಲುವೆ ಬರಲವನ ತನು ನಡ
ನಡುಗಿ ನಿಂದುದದಾವ ಹೆಂಗಸು
ಪಡೆದಳೀ ಚೆಲುವಿಕೆಯನೆನುತೀಕ್ಷಿಸಿದನಂಗನೆಯ ೯

ಅರಿದು ನೆತ್ತರುಗಾಣದಲಗಿದು
ನೆರೆ ಬಿಗಿಯೆ ಮೈ ಬಾಸುಳೇಳದ
ಹುರಿ ಬಲಿದ ನೇಣ್ಸೋಂಕಿದೊಡೆ ಹೊಗೆ ಮಸಗದೆದೆಗಿಚ್ಚು
ಅರರೆ ಕಂಗಳ ಧಾರೆ ಯಾವನ
ಕೊರಳ ಕೊಯ್ಯದದಾವನರಿಕೆಯ
ಹುರುಳುಗೆಡಿಸದಿದಾವ ನಿಲುವನು ಶಿವ ಶಿವಾಯೆಂದ ೧೦

ಆವ ಜನ್ಮದ ಸುಕೃತ ಫಲ ನೆರೆ
ಧೀ ವಧುವ ಸೇರಿದರೊ ಧನ್ಯರು
ತಾವಲಾ ಬಳಿಕೇನು ಪೂರ್ವದ ಸುಖದ ಸರ್ವಸ್ವ
ಭಾವಿಸಲು ಸುಕೃತಾವಳಿಗಳಿಂ
ದೀ ವನಿತೆಯಲ್ಲಿಂದ ಮೇಣಿ
ನ್ನಾವುದತಿಶಯವುಂಟೆನುತ ಖಳರಾಯನಿದಿರೆದ್ದ ೧೧

ತರುಣಿ ಬಾ ಕುಳ್ಳಿರು ಮದಂತಃ
ಕರಣದೆಡರಡಗಿತ್ತು ಕಾಮನ
ದುರುಳತನಕಿನ್ನಂಜುವೆನೆ ನೀನೆನಗೆ ಬಲವಾಗೆ
ಬಿರುದ ಕಟ್ಟುವೆನಿಂದುವಿಗೆ ಮಧು
ಕರಗೆ ಕೋಗಿಲೆಗೆಂದು ಖಳನ
ಬ್ಬರಿಸಿ ನುಡಿಯಲು ಖಾತಿಗೊಂಡಿಂತೆಂದಳಿಂದುಮುಖಿ ೧೨

ಬಾಯಿ ಹುಳುವುದು ಬಯಲ ನುಡಿದೊಡೆ
ನಾಯಿತನ ಬೇಡೆಲವೊ ಕೆಡದಿರು
ರಾಯನಂಗನೆ ಕಳುಹೆ ಬಂದೆನು ಮಧುವ ತರಲೆಂದು
ಸಾಯಬೇಕೇ ಹಸಿದ ಶೂಲವ
ಹಾಯಿ ಹೋಗೆನೆ ನಿನ್ನ ಬೈಗಳು
ನೋಯಿಸುವವೇ ತನ್ನನೆನುತವೆ ತುಡುಕಿದನು ಸತಿಯ ೧೩

ಕರವನೊಡೆಮುರುಚಿದಳು ಬಟ್ಟಲ
ಧರೆಯೊಳೀಡಾಡಿದಳು ಸತಿ ಮೊಗ
ದಿರುಹಿ ಬಾಗಿಲ ದಾಂಟಿ ಭಯದಲಿ ನಡುಗಿ ಡೆಂಡಣಿಸಿ
ತರಳೆ ಹಾಯ್ದಳು ಮೊಲೆಯ ಜಘನದ
ಭರದಿ ಬಡನಡು ಮುರಿಯದಿಹುದೇ
ಪರ ಸಭಾಗ್ಯತೆಗೆನಲು ರಭಸದೊಳೋಡಿದಳು ಸಭೆಗೆ ೧೪

ಒಡನೆ ಬೆಂಬತ್ತಿದನು ತುರುಬನು
ಹಿಡಿದು ತೊತ್ತಿನ ಮಗಳೆ ಹಾಯ್ದರೆ
ಬಿಡುವೆನೆ ಫಡಯೆನುತ ಹೊಯ್ದನು ಕಾಲಲೊಡೆವೆಟ್ಟಿ
ಕೆಡೆದು ರಕುತವ ಕಾರಿ ಹುಡಿಯಲಿ
ಮುಡಿ ಹೊರಳಿ ಬಿರುಗಾಳಿಯಲಿ ಸೈ
ಗೆಡೆದ ಕದಳಿಯ ಕಂಬದಂತಿರೆ ಕಾಂತೆಯೊರಳಿದಳು ೧೫

ಕರುಳ ತೆಗೆ ತಿನ್ನಡಗನೆನುತ
ಬ್ಬರಿಸಿ ಸೂರ್ಯನು ಕೊಟ್ಟ ದಾನವ
ಸುರವಣಿಸಿ ಕೀಚಕನ ಹೊಯ್ದನು ಹಿಡಿದು ಕುಸುಬಿದನು
ದುರುಳನಡೆಗೆಡೆದೆದ್ದು ನಿಮಿಷದೊ
ಳೊರಲುತೋಡಿದನಾಲಯಕೆ ಬಳಿ
ಕರಸ ಮೊದಲಾದಖಿಳಜನ ನಡುಗಿತ್ತು ಭಯ ಹೊಯ್ದು ೧೬

ಹೊಡೆ ಮರಳಿ ಮುರಿದೆದ್ದು ತುರುಬಿನ
ಹುಡಿಯ ಕೊಡಹುತ ಮೊಲೆಗೆ ಮೇಲುದು
ತೊಡಿಸಿ ಗಲ್ಲದ ರಕುತವನು ಬೆರಲಿಂದ ಮಿಡಿ ಮಿಡಿದು
ನುಡಿಯಲಾಗದೆ ಖಳನು ಹೆಂಗುಸ
ಬಡಿಯೆ ನೋಡುತ್ತಿಹರೆ ಹಿರಿಯರು
ಒಡಿದ ಮೌನದ ಹೊತ್ತು ಲೇಸೆಂದಬಲೆ ಹಲುಬಿದಳು ೧೭

ಶಿವ ಶಿವಾ ಪಾಪಿಗಳು ಪತಿಯಾ
ದವರ ತಾಗಲಿ ಸುಯ್ಲುಕಟ ನಾ
ಲುವರ ನಡುವಣ ಹಾವು ಸಾಯದು ನಿರಪರಾಧಿಯನು
ಅವಗಡಿಸಿದನು ಖಳನು ಧರ್ಮದ
ವಿವರ ಸುದ್ದಿಯನಾಡದೀ ಜನ
ನಿವಹ ಘೋರಾರಣ್ಯವಾಯ್ತೆಂದೊರಲಿದಳು ತರಳೆ ೧೮

ಎಲವೊ ದೇಶಿಗ ಕಂಕಭಟ್ಟನೆ
ಹಲವು ಧರ್ಮವ ಬಲ್ಲೆ ಗಡ ನೃಪ
ತಿಲಕಗರುಹುವುದೇನು ಸನ್ಯಾಸಿಗಳಿಗುಚಿತವಿದು
ತಿಳಿಯೆ ದೇಶಿಗನಿಂಗೆ ದೇಶಿಗ
ರೊಲವು ಸಮನಿಸಬೇಕು ಸಭೆಯಲಿ
ಬಲವಿಹೀನರಿಗಾಪ್ತರಿಲ್ಲೆಂದಬಲೆಯೊರಲಿದಳು ೧೯

ಧೈರ್ಯವನು ನೆರೆ ಬಲಿದು ಮೇಲಣ
ಕಾರ್ಯಭಾಗವನರಿದು ನೃಪಜನ
ವರ್ಯ ನೋಡದೆ ನುಡಿಸದಿದ್ದನು ಧರ್ಮನಂದನನು
ಶೌರ್ಯಕವಸರವಲ್ಲ ನಮಗೀ
ಯಾರ್ಯನಾಜ್ಞೆಯೆನುತ್ತ ಬಳಿಕಾ
ತುರ್ಯರಿದ್ದರು ಪಾರ್ಥ ಯಮಳರು ಬಲಿದ ದುಗುಡದಲಿ ೨೦

ನೊಂದಳಕಟಾ ಸತಿಯೆನುತ ಮನ
ನೊಂದು ಸೈವೆರಗಾಗಿ ಖತಿಯಲಿ
ಕಂದಿ ನಸು ಮೈ ಬಾಗಿ ರೋಷದೊಳೌಡನೊಡೆಯವುಚಿ
ಮಂದಿಯರಿಯದವೊಲು ಕಂಚೇಷ್ಟೆಯೊ
ಳೊಂದಿ ಮೆಲ್ಲನೆ ಬಾಗಿ ನೋಡಿದ
ನಂದು ರಾಜಾಲಯದ ಮುಂದಣ ಮರನನಾ ಭೀಮ ೨೧

ಒಳಗೆ ನಿಶ್ಚೈಸಿದನು ಮೊದಲಲಿ
ಹಿಳಿದು ಹಿಂಡುವೆನಿವಳ ಬಡಿದೀ
ಖಳನನಿವನೊಡಹುಟ್ಟಿದರನಿವನಖಿಳ ಬಾಂಧವರ
ಬಳಿಕ ವಿಗಡ ವಿರಾಟ ರಾಯನ
ಕೊಲುವೆನರಿಯದ ಮುನ್ನ ಕೌರವ
ಕುಲವ ಸವರುವೆನೆಂದು ಕಿಡಿಕಿಡಿಯೋದನಾ ಭೀಮ ೨೨

ಆತನಿಂಗಿತದನುವನರಿತು ಮ
ಹೀತಳಾಧಿಪ ಧರ್ಮಸುತನತಿ
ಕಾತರಿಸದಿರು ವಲಲ ಸೈರಿಸು ಸೈರಿಸಕಟೆನುತ
ಈ ತರುವ ಮುರಿಯದಿರು ಸುಜನ
ವ್ರಾತಕಾಶ್ರಯವೂರ ಹೊರಗೆ ಮ
ಹಾತಿಶಯ ತರುವುಂಟು ನಿನ್ನಯ ಬಾಣಸಿನ ಮನೆಗೆ ೨೩

ಧರ್ಮಮಯ ತರುವಿದನು ಮುರಿಯದಿ
ರೆಮ್ಮ ಮಾತನು ಕೇಳೆನಲು ಮಿಗೆ
ಸುಮ್ಮನೋಲಗದಿಂದ ಸರಿದನು ಭೀಮ ದುಗುಡದಲಿ
ಕರ್ಮಫಲವಿದು ನಿನಗೆ ಮಾನಿನಿ
ನಿಮ್ಮ ಭವನಕೆ ಹೋಗು ಶಿಕ್ಷಿಸ
ಲಮ್ಮದೀ ಸಭೆ ಬಗೆಯನಾತನು ಮತ್ಸ್ಯ ಭೂಪತಿಯ ೨೪

ಕೋಪಕವಸರವಲ್ಲ ಪತಿಗಳು
ಕಾಪುರುಷರೇ ನಿನ್ನವರು ಪರಿ
ತಾಪವನು ಬೀಳ್ಕೊಡು ಪತಿವ್ರತೆ ಪುಣ್ಯವಧು ನೀನು
ದೀಪವಲ್ಲಾ ಕ್ಷಮೆಯಖಿಳ ದೋ
ಷಾಪಹಾರವು ಶೌರ್ಯ ಧರ್ಮದ
ರೂಪು ನೆಲೆಯಾ ಕ್ಷಮೆಯೆನಲು ಬಳಿಕೆಂದಳಿಂದುಮುಖಿ ೨೫

ನೀರು ಹೊರಗಿಕ್ಕುವುದು ಮೂರೇ
ಬಾರಿ ಬಳಿಕದು ಪಾಪಿ ಜಾಡಿಸೆ
ಸೈರಿಸದು ಅನ್ಯಾಯ ಬಹುಳತೆಗೇನ ಮಾಡುವೆನು
ಸೈರಣೆಗೆ ತಾನವಧಿಯಿಲ್ಲಾ
ಪೌರುಷವು ಕಡು ಬಂಜೆಯಾಯಿತು
ಆರಯಿಕೆಯಲಿ ಜುಣುಗಿ ಜಾರುವಿರೇದಳಿಂದುಮುಖಿ ೨೬

ಅರರೆ ಹೆಂಗಸು ದಿಟ್ಟೆ ಮೋನದೊ
ಳಿರಲಿದಾವಂತರವು ರಾಯನ
ಹೊರೆಯಲೀ ಬಾಯ್ಬಡಿಕತನ ಗರುವಾಯಿಯೇಯೆನಲು
ಕೆರಳಿದಳು ಲಲಿತಾಂಗಿಯಿಲ್ಲಿಯು
ಹಿರಿಯರಲಿ ಹುರುಳಿಲ್ಲ ಮಾರುತಿ
ಗರುಹುವೆನು ಬಳಿಕಾದುದಾಗಲಿಯೆನುತ ತಿರುಗಿದಳು ೨೭

ಆ ಸುದೇಷ್ಣೆಯ ಮನೆಗೆ ಬರಲವ
ಳೀ ಸತಿಯ ನುಡಿಸಿದಳು ತಂಗಿ ವಿ
ಳಾಸವಳಿದಿದೆ ಮುಖದ ದುಗುಡವಿದೇನು ಹದನೆನಲು
ಈಸು ಮರವೆಯಿದರಸುತನದ ಮ
ಹಾ ಸಗಾಢಿಕೆಯೆಮ್ಮ ನೀವಪ
ಹಾಸ ಮಾಡುವಿರೆನುತ ದುರುಪದಿ ನುಡಿದಳೊಡತಿಯನು ೨೮

ದುರುಳ ನಿಮ್ಮೊಡಹುಟ್ಟಿದನು ನೀ
ವರಸುಗಳು ತಿರುಕುಳಿಗಳಾವಿ
ನ್ನಿರಲು ಬಾರದು ನೃಪತಿ ತಪ್ಪಿದೊಡಾರು ಕಾವವರು
ಕರೆಸಿ ಬುದ್ಧಿಯ ಹೇಳಿ ಎನ್ನನು
ಹೊರೆಯಲಾಪರೆ ಹೊರೆಯಿರಲ್ಲದ
ಡರಸಿ ಕಳುಹುವುದೆನ್ನನೆನಲಿಂತೆಂದಳಾ ರಾಣಿ ೨೯

ಲಲನೆ ಕೇಳನ್ಯಾಯದವರನು
ಕೊಲಿಸುವೆನು ಭಯಬೇಡ ಪರ ಸತಿ
ಗಳುಪಿದವನೊಡಹುಟ್ಟಿದನೆ ಕಡುಪಾಪಿ ಹಗೆಯೆನಲು
ಕೊಲಿಸುವೊಡೆ ನೀವೇಕೆ ತಪ್ಪಿನ
ಬಳಿಯಲೆನ್ನಾತಗಳು ಕೀಚಕ
ಕುಲವ ಸವರುವರೆನಗೆ ಕಾರಣವಿಲ್ಲ ಸಾರಿದೆನು ೩೦

ಎಂದು ಬೀಳ್ಕೊಂಡಬಲೆ ತನ್ನಯ
ಮಂದಿರಕೆ ಬಂದೊಳಗೊಳಗೆ ಮನ
ನೊಂದು ಸೈವೆರಗಾಗಿ ಚಿಂತಿಸಿ ನೂಕಿದಳು ಹಗಲ
ಕೊಂದುಕೊಂಬೆನೆ ಆತ್ಮಘಾತಕ
ಹಿಂದೆ ಹತ್ತದೆ ಮಾಣದೇಗುವೆ
ನೆಂದು ದ್ರೌಪದಿ ತನ್ನ ಮನದಲಿ ಹಿರಿದು ಮರುಗಿದಳು ೩೧

ಆರಿಗುಸುರುವೆನಾರ ಸಾರುವೆ
ನಾರಿಗೊರಲುವೆನಾರಿಗರುಹುವೆ
ನಾರ ಬೇಡುವೆನಕಟ ಹೆಂಗಸು ಜನ್ಮವನು ಸುಡಲಿ
ಘೋರ ಪಾತಕಿಯೆನ್ನವೊಲು ಮು
ನ್ನಾರು ನವೆದವರುಂಟು ಮರಣವು
ಬಾರದೆಂದೊರಲಿದಳು ಬಸುರನು ಹೊಯ್ದು ಶಶಿವದನೆ ೩೨

ಯಮಸುತಂಗರುಹುವೆನೆ ಧರ್ಮ
ಕ್ಷಮೆಯ ಗರ ಹೊಡೆದಿಹುದು ಪಾರ್ಥನು
ಮಮತೆಯುಳ್ಳವನೆಂಬೆನೇ ತಮ್ಮಣ್ಣನಾಜ್ಞೆಯಲಿ
ಭ್ರಮಿತನಾಗಿಹನುಳಿದರಿಬ್ಬರು
ರಮಣರಿವರೀ ನಾಯ ಕೊಲಲ
ಕ್ಷಮರು ನಿಸ್ಸಂದೇಹವೆಂದಳು ತನ್ನ ಮನದೊಳಗೆ ೩೩

ಎಲ್ಲರೊಳು ಕಲಿಭೀಮನೇ ಮಿಡು
ಕುಳ್ಳ ಗಂಡನು ಹಾನಿ ಹರಿಬಕೆ
ನಿಲ್ಲದಂಗೈಸುವನು ಕಡು ಓೀಹಾಳಿಯುಳ್ಳವನು
ಖುಲ್ಲನಿವನುಪಟಳವನಾತಂ
ಗೆಲ್ಲವನು ಹೇಳುವೆನು ಬಳಿಕವ
ನಲ್ಲಿ ಹುರುಳಿಲ್ಲದೊಡೆ ಕುಡಿವೆನು ಘೋರತರ ವಿಷವ ೩೪

ನಿಳಯವನು ಹೊರವಂಟು ಕಂಗಳ
ಬೆಳಗು ತಿಮಿರವ ಕೆಡಿಸೆ ಕಂಕಣ
ಲಲಿತ ಝೇಂಕೃತಿಯಿಂದ ತೂಗುವ ವಾಮಭುಜಲತೆಯ
ಒಲಿದು ಮೇಲುದ ನೂಕಿ ನಡುಗುವ
ಮೊಲೆಯ ಭರದಲಿಯಡಿಯಿಡುತ ಕಳ
ವಳದ ಕರಣದ ಮುಗುದೆ ಬಂದಳು ಬಾಣಸಿನ ಮನೆಗೆ ೩೫

ಕೆಲದಲೊಟ್ಟಿದ ಪತ್ರ ಶಾಕಾ
ವಳಿಯ ಫಲರಾಶಿಗಳ ಕಳವೆಯ
ಹೊಳೆವುತಿಹ ರಾಜಾನ್ನದಕ್ಕಿಯ ಸಾಲ ಹರಿಯಣದ
ಕೆಲಬಲದ ಸಂಭಾರ ಚೂರ್ಣದ
ಲಲಿತ ಬೋನದ ವಿವಿಧ ಭಕ್ಷ್ಯಾ
ವಳಿಯ ಬಾಣಸದೊಳಗೆ ಬಂದಳು ಮತ್ತಗಜಗಮನೆ ೩೬

ತರಿದ ಕುರಿಗಳ ಹಂದಿಯಡಗಿನ
ಜುರಿತ ರಕುತದ ಮೊಲನ ಖಂಡದ
ತಿರಿದ ಗುಬ್ಬಿಯ ಕೀಸಿ ಸೀಳಿದ ನವಿಲ ಲಾವುಗೆಯ
ತುರುಗಿದೆಲುವಿನ ಸಾಲ ಸುಂಟಿಗೆ
ಮೆರೆವ ಮಾಂಸದ ರಾಸಿಗಳ ಹರ
ದೆರಕೆಗಳ ಕಂಡಬಲೆ ಹೊಗಳಿದಳಡಬಳದ ಮನೆಯ ೩೭

ಆರಲರಿದನೊ ಭೀಮನೀ ಸೂ
ವಾರ ವಿದ್ಯೆಯ ಭಾಪು ವಿಧಿ-ಮುನಿ
ದಾರನಾವಂಗದಲಿ ಬರಿಸದು ಶಿವ ಶಿವಾಯೆನುತ
ನಾರಿ ನಸುನಗುತೊಳಗೆ ಹೊಕ್ಕು ಬ
ಕಾರಿ ಮಂಚದೊಳಿರಲು ನಿದ್ರಾ
ಭಾರ ವಿಹ್ವಲಕರಣನನು ಹೊದ್ದಿದಳು ಲಲಿತಾಂಗಿ ೩೮

ಎಬ್ಬಿಸಲು ಭುಗಿಲೆಂಬನೋ ಮೇ
ಣೊಬ್ಬಳೇತಕೆ ಬಂದೆ ಮೋರೆಯ
ಮುಬ್ಬಿದೇಕೆಂದೆನ್ನ ಸಂತೈಸುವನೊ ಸಾಮದಲಿ
ತುಬ್ಬುವುದೊ ತಾ ಬಂದ ಬರವಿದು
ನಿಬ್ಬರವಲಾ ಜನದ ಮನಕಿ
ನ್ನೆಬ್ಬಿಸಿಯೆ ನೋಡುವೆನೆನುತ ಸಾರಿದಳು ವಲ್ಲಭನ ೩೯

ಮೆಲ್ಲ ಮೆಲ್ಲನೆ ಮುಸುಕ ಸಡಿಲಿಸಿ
ಗಲ್ಲವನು ಹಿಡಿದಲುಗಲಪ್ರತಿ
ಮಲ್ಲನೆದ್ದನು ನೋಡಿದನು ಪಾಂಚಾಲ ನಂದನೆಯ
ವಲ್ಲಭೆಯೆ ಬರವೇನು ಮುಖದಲಿ
ತಲ್ಲಣವೆ ತಲೆದೋರುತಿದೆ ತಳು
ವಿಲ್ಲದುಸುರಿರುಳೇಕೆ ಬಂದೆ ಲತಾಂಗಿ ಹೇಳೆಂದ ೪೦

ಸೈರಿಸರು ಬಾಣಸದ ಭವನದ
ಸಾರಿಯರು ದುರ್ಜನರು ಖುಲ್ಲಕು
ಠಾರರಿವರರಮನೆಯು ನಾಯ್ಗಳು ನಾವು ದೇಶಿಗರು
ಭಾರವಿದು ಕೆಲರರಿಯದಂತಿರೆ
ನಾರಿ ನೀ ಹೇಳೆನುತ ದುಗುಡವಿ
ದಾರ ದೆಸೆಯಿಂದಾಯಿತೆನಲಿಂತೆಂದಳಿಂದುಮುಖಿ ೪೧

ನಿನ್ನೆ ಹಗಲರೆಯಟ್ಟಿ ಕೀಚಕ
ಕುನ್ನಿಯೊದೆದನು ರಾಜಸಭೆಯಲಿ
ನಿನ್ನ ವಂದಿಗರಿರಲು ಪರಿಭವವುಚಿತವೇ ತನಗೆ
ಎನ್ನನವ ಬೆಂಬಳಿಯ ಬಿಡ ನಾ
ನಿನ್ನು ಬದುಕುವಳಲ್ಲ ಪಾತಕ
ನಿನ್ನ ತಾಗದೆ ಮಾಣದೆನಲಾ ಭೀಮ ಖತಿಗೊಂಡ ೪೨

ಉಸುರಲಾಗದು ನಿನ್ನ ಹರಿಬಕೆ
ಮಿಸುಕುವವರಾವಲ್ಲ ಹೆಂಡಿರ
ಗಸಣಿಗೊಂಬವರಲ್ಲ ಹುದುವಿನ ಗಂಡತನವಿದನು
ಶಶಿವದನೆ ಸುಡು ಕಷ್ಟವೀಯುಪ
ದೆಸೆಯುವರು ನಾವಲ್ಲ ನಿನ್ನವ
ರಸಮ ಸಾಹಸರುಳಿದ ನಾಲ್ವರಿಗರುಪು ಹೋಗೆಂದ ೪೩

ರಮಣ ಕೇಳುಳಿದವರು ತನ್ನನು
ರಮಿಸುವರು ಮಾನಾರ್ಥವೆನೆ ನಿ
ರ್ಗಮಿಸುವರು ನೀನಲ್ಲದುಳಿದವರುಚಿತ ಬಾಹಿರರು
ಮಮತೆಯಲಿ ನೀ ನೋಡು ಚಿತ್ತದ
ಸಮತೆಯನು ಬೀಳ್ಕೊಡು ಕುಠಾರನ
ಯಮನ ಕಾಣಿಸಿ ಕರುಣಿಸೆಂದಳು ಕಾಂತೆ ಕೈಮುಗಿದು ೪೪

ಕಲಹಕಾದೊಡೆ ನಾವು ರಮಿಸುವ
ರುಳಿದವರು ಬಳಿಕೇನು ಗಾದೆಯು
ಬಳಕೆ ಕೆಲಬರು ಗಳಿಸಿದೊಡೆ ಕೆಲರುಂಡು ಜಾರುವರು
ಅಳುಕಿ ನಡೆವವರಲ್ಲ ನಿನ್ನಯ
ಹಳಿವು ಹರಿಬವ ಹೇಳಿ ಚಿತ್ತವ
ತಿಳುಹಿಕೊಂಬುದು ನಾವು ಭೀತರು ಧರ್ಮಜನ ಹೊರೆಗೆ ೪೫

ಹೆಂಡತಿಯು ಹರಿಬದಲಿಯೊಬ್ಬನೆ
ಗಂಡುಗೂಸೇ ವೈರಿಯನು ಕಡಿ
ಖಂಡವನು ಮಾಡುವನು ಮೇಣ್ ತನ್ನೊಡಲನಿಕ್ಕುವನು
ಗಂಡರೈವರು ಮೂರು ಲೋಕದ
ಗಂಡರೊಬ್ಬಳನಾಳಲಾರಿರಿ
ಗಂಡರೋ ನೀವ್ ಭಂಡರೋ ಹೇಳೆಂದಳಿಂದುಮುಖಿ ೪೬

ಅಂದು ಕೌರವ ನಾಯಿ ಸಭೆಯಲಿ
ತಂದು ತೋರಿದನುನ್ನತಿಯ ಬಳಿ
ಕಿಂದು ಕೀಚಕ ಕುನ್ನಿಯೊದೆದನು ರಾಜಸಭೆಯೊಳಗೆ
ಅಂದು ಮೇಣಿಂದಾದ ಭಂಗಕೆ
ಕುಂದದಾವುದು ನೀವು ಬಳ್ಲಿದ
ರೆಂದು ಹೊಕ್ಕರೆ ಹೆಣ್ಣ ಕೊಂದಿರಿಯೆಂದಳಿಂದುಮುಖಿ ೪೭

ದಾನವರು ಮಾನವರೊಳಿನ್ನಭಿ
ಮಾನವನು ಕೊಂಬವನ ಹೆಸರನ
ದೇನನೆಂಬೆನು ನೊಂದು ನುಡಿದೊಡೆ ಖಾತಿಯಿಲ್ಲೆಮಗೆ
ಈ ನಪುಂಕಸರೊಡನೆ ಹುಟ್ಟಿದ
ನಾನು ಮೂಗುಳ್ಳವನೆ ಮಾನಿನಿ
ನೀನು ತೋರಿದ ಪರಿಯಲೆಂಬುದು ಭೀತಿ ಬೇಡೆಂದ ೪೮

ಅಂದು ದುಶ್ಯಾಸನನ ಕರುಳನು
ತಿಂದಡಲ್ಲದೆ ತಣಿವು ದೊರಕೊಳ
ದೆಂದು ಹಾಯ್ದೊಡೆ ಹಲುಗಿರಿದು ಮಾಣಿಸಿದನಾ ವ್ಯಥೆಯ
ಇಂದು ಕೀಚಕ ನಾಯನೆರಗುವೆ
ನೆಂದು ಮರನನು ನೋಡಿದರೆ ಬೇ
ಡೆಂದ ಹದನನು ಕಂಡೆ ನೀನೆಸೆಗುಂಟೆಯಪರಾಧ ೪೯

ಹೆಣ್ಣ ಹರಿಬಕ್ಕೋಸುಗವೆ ತ
ಮ್ಮಣ್ಣನಾಜ್ಞೆಯ ಮೀರಿ ಕುಂತಿಯ
ಚಿಣ್ಣ ಬದುಕಿದನೆಂದು ನುಡಿವರು ಕುಜನರಾದವರು
ಅಣ್ಣನವರಿಗೆ ದೂರುವುದು ನಾ
ವುಣ್ಣದುರಿಯಿವು ರಾಯನಾಜ್ಞೆಯ
ಕಣ್ಣಿಯಲಿ ಬಿಗಿವಡೆದು ಕೆಡೆದೆವು ಕಾಂತೆ ಕೇಳೆಂದ ೫೦

ಹೊದ್ದುವುದು ಫಲುಗುಣನ ಪಾದಕೆ
ಬಿದ್ದು ಯಮನಂದನನ ಮನವನು
ತಿದ್ದುವುದು ಸಹದೇವ ನಕುಲರ ಕೈಯಲೆನಿಸುವುದು
ಗೆದ್ದು ಕೊಡುವರು ನಿನ್ನ ಪಾಲಿಸ
ದಿದ್ದರಾದೊಡೆ ದೋಷವವರನು
ಹೊದ್ದುವುದು ನೀನೆನ್ನ ಬರಿದೇ ಕಾಡ ಬೇಡೆಂದ ೫೧

ಗಂಡ ಗರ್ವವ ನುಡಿಯೆವೆಮ್ಮಯ
ದಂಡಿ ತಾನದು ಬೇರೆ ನಾವೀ
ಭಂಡತನದಲಿ ಬದುಕಲರಿಯೆವು ಧರ್ಮಗಿರ್ಮವನು
ಕೊಂಡು ಕೊನರುವರಲ್ಲ ರಾಯನ
ನಂಡಲೆದು ಕೀಚಕನ ತಲೆಯನು
ಚೆಂಡನಾಡಿಸು ರಮಣಿ ಮೇಣರ್ಜುನಗೆ ಹೇಳೆಂದ ೫೨

ತರುಣಿ ದಿಟ ಕೇಳಿಂದು ಮೊದಲಾ
ಗರಸಿ ನೀ ನಾಲ್ವರಿಗೆ ನಾವೆಡೆ
ಮುರಿದವರು ಬಿಟ್ಟವರು ನಿನ್ನಯ ಸೂಳು ಪಾಳೆಯವ
ಅರಸನನು ಪ್ರಾರ್ಥಿಸುವುದರ್ಜುನ
ವರ ನಕುಲ ಸಹದೇವರಿಗೆ ವಿ
ಸ್ತರಿಸಿ ಹೇಳ್ವುದು ನಮ್ಮೊಡನೆ ಫಲಸಿದ್ಧಿಯಿಲ್ಲೆಂದ ೫೩

ಕೇಳುತಿದ್ದಳು ಕೊರಳ ಸೆರೆ ಗೋ
ನಾಳಿಗೌಕಿತು ಬಿಕ್ಕಿ ಬಿಕ್ಕಿ ವಿ
ಲೋಲಲೋಚನೆಯಕಟ ನೆನೆದಳು ಬಾಷ್ಪವಾರಿಯಲಿ
ಶೂಲ ಮರುಮೊನೆಗೊಂಡವೊಲು ಸುಳಿ
ವಾಳೆ ಝಳಕೆ ತಾಗಿದವೊಲುದರ
ಜ್ವಾಲೆ ನೆತ್ತಿಗೆ ನಿಲುಕೆ ಹಲುಬಿದಳಬಲೆ ಬಿಸುಸುಯ್ದು ೫೪

ಕೆಂದಳದ ಸೆಕೆಯಲಿ ಕಪೋಲವು
ಕಂದಿ ಕಸರಿಕೆಯಾಯ್ತು ನಿಡು ಸುಯಿ
ಲಿಂದ ಸೀಕರಿಯೋದವೇಕಾವಳಿಯ ಮುತ್ತುಗಳು
ಸಂದಣಿಸಿದೆವೆಗಳಲಿ ಬಾಷ್ಪದ
ಬಿಂದು ತಳಿತುದು ನಟ್ಟ ದೃಷ್ಟಿಯೊ
ಳಿಂದುಮುಖಿ ಸೈಗರೆದು ತೂಗಿದಳಡಿಗಡಿಗೆ ಶಿರವ ೫೫

ಆವ ಹೆಂಗುಸನಳಲಿಸಿದೆನಿ
ನ್ನಾವ ಧರ್ಮವನಳಿದೆನೋ ತಾ
ನಾವ ಪಾಪದ ಫಲಕೆ ಪಿಡಿದೆನೊ ಸಂಚಕಾರವನು
ಆವ ಹೆಂಗಸು ನವೆದಳೆನ್ನವೊ
ಲಾವಳಳಲಿದು ಮರುಗಿದಳು ಮ
ತ್ತಾವಳೆನ್ನಂದದಲಿ ಪಡೆದವಳುಂಟೆ ಲೋಕದಲಿ ೫೬

ಇನ್ನು ಹುಟ್ಟದೆಯಿರಲಿ ನಾರಿಯ
ರೆನ್ನವೊಲು ಭಂಗಿತರು ಭುವನದೊ
ಳಿನ್ನು ಜನಿಸಲುಬೇಡ ಗಂಡರು ಭೀಮಸನ್ನಿಭರು
ಎನ್ನವೊಲು ಪಾಂಡವರವೊಲು ಸಂ
ಪನ್ನ ದುಃಖಿಗಳಾರು ನವೆದರು
ಮುನ್ನಿನವರೊಳಗೆಂದು ದ್ರೌಪದಿ ಹಿರಿದು ಹಲುಬಿದಳು ೫೭

ಆವ ಗರಳವ ಕುಡಿವೆನೋ ಮೇ
ಣಾವ ಬೆಟ್ಟವನಡರಿ ಬೀಳ್ವೆನೊ
ಯಾವ ಮಡುವನು ಹೊಗುವೆನೋ ಹಾಸರೆಯ ಗುಂಪಿನಲಿ
ಆವ ಕುಂತವ ಹಾಯ್ವೆನೋ ಮೇ
ಣಾವ ಪಾವಕನೊಳಗೆ ಹೊಗುವೆನೊ
ಸಾವು ಸಮನಿಸದೆನಗೆನುತ ಮರುಗಿದಳು ನಳಿನಾಕ್ಷಿ ೫೮

ಮಂದೆಗೆಳಸಿದ ಪಾಪಿ ಕೌರವ
ನಂದು ಮುಂದಲೆವಿಡಿದು ಸೈಂಧವ
ಬಂದು ಬಳಿಕಾರಣ್ಯವಾಸದೊಳೆನ್ನನೆಳದೊಯ್ದು
ಇಂದು ಕೀಚಕ ನಾಯ ಕಾಲಲಿ
ನೊಂದೆ ನಾನೀ ಮೂರು ಬಾರಿಯೆ
ಬಂದ ಭಂಗವೆ ಸಾಕೆನುತ ಬಸವಳಿದಳಿಂದುಮುಖಿ ೫೯

ಜನನವೇ ಪಾಂಚಾಲ ರಾಯನ
ಮನೆ ಮನೋವಲ್ಲಭರದಾರೆನೆ
ಮನುಜಗಿನುಜರು ಗಣ್ಯವೇ ಗೀರ್ವಾಣರಿಂ ಮಿಗಿಲು
ಎನಗೆ ಬಂದೆಡರೀ ವಿರಾಟನ
ವನಿತೆಯರುಗಳ ಮುಡಿಯ ಕಟ್ಟುವ
ತನುವ ತಿಗುರುವ ಕಾಲನೊತ್ತುವ ಕೆಲಸದುತ್ಸಾಹ ೬೦

ಹಗೆಗಳಿಗೆ ತಂಪಾಗಿ ಬದುಕುವ
ಮುಗುದರಿನ್ನಾರುಂಟು ಭಂಗಕೆ
ಹೆಗಲ ಕೊಟ್ಟಾನುವ ವಿರೋಧಿಗಳುಂಟೆ ಲೋಕದಲಿ
ವಿಗಡ ಬಿರುದನು ಬಿಸುಟು ಬಡಿ ಹೋ
ರಿಗಳು ಪಾಂಡವರಂತೆ ಮೂಗು
ರ್ಚಿಗಳದಿನ್ನಾರುಂಟೆನುತ ಮರುಗಿದಳು ನಳಿನಾಕ್ಷಿ ೬೧

ಕಾಲನನು ಕೆರಳಿದೊಡೆ ಮುರಿವೆ
ಚ್ಚಾಳುತನದವರೆನ್ನನೊಬ್ಬಳ
ನಾಳಲಾರಿರಿ ಪಾಪಿಗಳಿರಪಕೀರ್ತಿಗಳುಕಿರಲ
ತೋಳ ಹೊರೆ ನಿಮಗೇಕೆ ಭೂಮಿಾ
ಪಾಲ ವಂಶದೊಳುದಿಸಲೇತಕೆ
ಕೂಳುಗೇಡಿಂಗೊಡಲ ಹೊರುವಿರಿಯೆಂದಳಿಂದುಮುಖಿ ೬೨

ಧರೆಯ ಭಂಡಾರವನು ಪುರವನು
ಕರಿತುರಗ ರಥ ಪಾಯದಳವನು
ಕುರುಕುಲಾಗ್ರಣಿ ಸೆಳೆದುಕೊಂಡನು ನಿಮ್ಮ ಹೊರವಡಿಸಿ
ದುರುಳ ಕೀಚಕಗೆನ್ನ ಕೊಟ್ಟಿರಿ
ಪರಿಮಿತದಲಿರವಾಯ್ತು ನಿಮ್ಮೆಲ್ಲ
ವರಿಗೆ ಲೇಸಾಯ್ತುಕಟಯೆಂದಬುಜಾಕ್ಷಿ ಹಲುಬಿದಳು ೬೩

ಭಾವ ಭಾಗ್ಯಾಧಿಕನು ಕೌರವ
ದೇವನರಸುಗಳೊಡೆಯುತನವನು
ನೀವು ಕೃಷ್ಣನ ಕೂರ್ಮೆ ಧರ್ಮದಿ ಪಾಲಿಸಿದಿರೀಗ
ನೀವು ತಟತಟವಾಗಿ ಲೋಗರ
ಸೇವೆಯಲಿ ಬೆಂದೊಡಲ ಹೊರುವಿರಿ
ಸಾವವಳು ನಿಮಗಂಜಲೇಕೆಂದಬಲೆಯೊರಲಿದಳು ೬೪

ಭೀಮ ಕೊಟ್ಟೈ ತನಗೆ ಸಾವಿನ
ನೇಮವನು ನಿಮ್ಮಣ್ಣನಾಜ್ಞೆ ವಿ
ರಾಮವಾಗದೆ ಬದುಕೆ ಧರ್ಮದ ಮೈಸಿರಿಯನರಿದು
ಕಾಮಿನಿಯ ಕೇಳಿಯಲಿ ನೆನೆವುದು
ತಾಮಸದಿ ತಾ ಮಿಾರಿ ನುಡಿದು
ದ್ದಾಮತೆಯ ಸೈರಿಸುವುದೆಂದೆರಗಿದಳು ಚರಣದಲಿ ೬೫

ಎನಲು ಕಂಬನಿದುಂಬಿದನು ಕಡು
ನೆನೆದುದಂತಃಕರಣ ರೋಷದ
ಘನತೆ ಹೆಚ್ಚಿತು ಹಗೆಗಳನು ಹಿಂಡಿದನು ಮನದೊಳಗೆ
ತನುಪುಳಕವುಬ್ಬರಿಸಿ ಮೆಲ್ಲನೆ
ವನಿತೆಯನು ತೆಗೆದಪ್ಪಿದನು ಕಂ
ಬನಿಯದೊಡೆದನು ಸೆರಗಿನಲಿ ಕಲಿಭೀಮ ಮಾನಿನಿಯ ೬೬

ಕುರುಳ ನೇವರಿಸಿದನು ಗಲ್ಲವ
ನೊರಸಿ ಮುಂಡಾಡಿದನು ಮಂಚದ
ಹೊರೆಯ ಗಿಂಡಿಯ ನೀರಿನಲಿ ತೊಳೆದನು ಮುಖಾಂಬುಜವ
ಅರಸಿ ಬಿಡು ಬಿಡು ಖಾತಿಯನು ವಿ
ಸ್ತರಿಸಲೇಕೆಮ್ಮಣ್ಣನಾಜ್ಞೆಯ
ಗೆರೆಯ ದಾಂಟಿದೆ ದಾಂಟಿದೆನು ಹೋಗೆಂದನಾ ಭೀಮ ೬೭

ಬಸುರ ಬಗಿವೆನು ಕೀಚಕನ ನಸು
ಮಿಸುಕಿದೊಡೆ ವೈರಾಟ ವಂಶದ
ಹೆಸರ ತೊಡೆವೆನು ನಮ್ಮನರಿದೊಡೆ ಕೌರವವ್ರಜವ
ಕುಸುರಿದರಿವೆನು ಭೀಮ ಕಷ್ಟವ
ನೆಸಗಿದನು ಹಾಯೆಂದರಾದೊಡೆ
ಮುಸುಡನಮರಾದ್ರಿಯಲಿ ತೇವೆನು ದೇವಸಂತತಿಯ ೬೮

ಮುನಿದನಾದೊಡೆಯಣ್ಣತನವಿಂ
ದಿನಲಿ ಹರಿಯಲಿ ಪಾರ್ಥ ನಕುಲರು
ಕನಲಿದೊಡೆ ಕೈದೋರುವೆನು ಸಹದೇವನಿವರುಗಳ
ಅನುಜನೆಂಜೆನೆ ಕೃಷ್ಣ ಹಾಯ್ದರೆ
ಘನ ಮುರಾರಿಯ ಮೀರುವೆನು ಬಳಿ
ಕೆನಗೆ ಸಮಬಲರಾರು ತರಿವೆನು ಕೀಚಕಾನ್ವಯವ ೧೯

ಈಸು ದಿನವೆಮ್ಮಣ್ಣನಾಜ್ಞೆಯ
ಪಾಶದಲಿ ಸಿಕ್ಕಿರ್ದ ಸಿಂಹದ
ಕೂಸ ನರಿ ಕೆಣಕುವವೊಲೀ ಕುರು ಕೀಚಕಾದಿಗಳು
ಗಾಸಿಯಾದರು ಕೆಣಕಿ ನಾಯ್ಗಳ
ವೀಸ ಬಡ್ಡಿಯಲಸುವ ಕೊಂಬೆನು
ವಾಸಿ ಧರ್ಮದ ಮೇರೆದಪ್ಪಿತು ಕಾಂತೆ ಕೇಳೆಂದ ೨೦

ತರುಣಿ ಕೀಚಕ ಕೌರವೇಂದ್ರರ
ಹರಣಕಿದ ಕೋ ಸಂಚಕಾರವ
ಕೆರಳಿದೊಡೆಯಿಾ ಭೀಮ ಬಗೆವನೆ ನೀತಿಗೀತಿಗಳ
ಕೆರಳಿಚಿದೆಯಿನ್ನೇನು ನಿನ್ನಯ
ಹರಿಬವೆನ್ನದು ನಾಯಿ ಜಾರನ
ಕರೆದು ಸಂಕೇತದಲಿ ಸೂಚಿಸು ನಾಟ್ಯಮಂದಿರವ ೨೧

ಅಲ್ಲಿಗಿರುಳೈತಂದು ಮರೆಯಲಿ
ಖುಲ್ಲನುದರವ ಬಗಿದು ರಕುತವ
ಚೆಲ್ಲುವೆನು ಶಾಕಿನಿಯರಿಗೆ ಸಂದೇಹ ಬೇಡಿದಕೆ
ಅಲ್ಲಿ ಕೆಲಬಲನರಿದುದಾದೊಡೆ
ಬಲ್ಲೆನದಕೌಷಧಿಯ ಕರೆ ಮರೆ
ಯಿಲ್ಲ ಮಾನಿನಿ ಹೋಗೆನುತ ಬೀಳ್ಕೊಟ್ಟನಂಗನೆಯ ೨೨

ಹರುಷದಲಿ ಹೆಚ್ಚಿದಳು ಪುರುಷರ
ಪುರುಷನಲ್ಲಾ ಭೀಮ ತನ್ನಯ
ಪರಮ ಸುಕೃತೋದಯವಲಾ ನೀನೊಬ್ಬನೆಂದೆನುತ
ಅರಸಿ ಕಾಂತನ ಬೀಳುಕೊಂಡಳು
ತಿರುಗಿದಳು ನಿಜಭವನಕಿತ್ತಲು
ತರಣಿ ತೆಗೆದನು ತಾವರೆಯ ಬಾಗಿಲಿನ ಬೀಯಗವ ೨೩

ಆ ದಿವಸವರಮನೆಗೆ ಬರುತ ವೃ
ಕೋದರನ ವಲ್ಲಭೆಯ ಕಂಡನು
ಕೈದುಡುಕಲಂಜಿದನು ಮಾತಾಡಿಸಿದನಂಗನೆಯ
ಹೋದಿರುಳು ಯುಗವಾಗಿ ಸವೆದುದು
ನೀ ದಯಾಂಬುಧಿ ಕುಸುಮಶರ ಯಮ
ನಾದನದ ನೀ ಬಲ್ಲೆಯೆಂದನು ಕೀಚಕನು ನಗುತ ೨೪

ಕುಸುಮಶರ ಯಮನಹನು ಅಮೃತವು
ವಿಷವಹುದು ಬಳಿಕಾಲಿಕಲುಗಳು
ಬಿಸಿಯುಹವು ಬಾಂಧವರು ವೈರಿಗಳಹರು ನಿಮಿಷದಲಿ
ಒಸೆದರೊಲ್ಲದರಹರು ಲೋಗರ
ಶಶಿವದನೆಗಳುಪಿದ ದುರಾತ್ಮನ
ವಸುಧೆ ಹೊರದೆಲೆ ಪಾಪಿ ಕೀಚಕಯೆಂದಳಿಂದುಮುಖಿ ೨೫

ಬಳಿಕ ನಿನ್ನ ಪುರಾಣ ಧರ್ಮವ
ತಿಳಿದುಕೊಂಬೆನಿದೊಮ್ಮೆ ನಿನ್ನಯ
ಲಲಿತ ಕರುಣ ಕಟಾಕ್ಷಕವಚವ ತೊಡಿಸಿ ತನ್ನೊಡಲ
ಅಳುಕದೆಸುವ ಮನೋಜನಂಬಿನ
ಹುಳುಕ ಮುರಿ ಡಿಂಗರಿಗನಹೆನೆಂ
ದಳಿಮನದಲಾ ಖೂಳನಬುಜಾನನೆಗೆ ಕೈಮುಗಿದ ೨೬

ಅರಿದರಾದೊಡೆ ನಿನ್ನ ವಂಶವ
ತರಿವರೆನ್ನವರೆಲವೊ ಕೆಲಬಲ
ನರಿಯದಂದದಿ ಬಂದು ನಾಟ್ಯದ ಗರುಡಿಯೊಳಗಿಹುದು
ನೆರೆದುದಾಯುಷ ನಿನಗೆ ಕತ್ತಲೆ
ಮನೆಯೊಳಾನೈತಹೆನುಯೆನ್ನನು
ಮರೆದು ನೀ ಬಿಡೆಯಾದುದಾಗಲಿಯೆಂದಳಿಂದುಮುಖಿ ೨೭

ಖಳ ಹಸಾದವ ಹಾಯ್ಕಿ ತನ್ನಯ
ನಿಳಯಕೈದಿದನಬುಜ ಬಾಂಧವ
ನಿಳಿದನಸ್ತಾಚಲದ ತಪ್ಪಲ ತಾವರೆಯ ಬನಕೆ
ನಳಿನಮುಖಿ ನಲವೇರಿ ಕಗ್ಗ
ತ್ತಲೆಯ ಹಬ್ಬುಗೆಯೊಳಗೆ ಕಂಗಳ
ಬೆಳಗು ಬಟ್ಟೆಯ ತೋರೆ ಬಂದಳು ಬಾಣಸಿನ ಮನೆಗೆ ೨೮

ಭೀಮ ನಿಂದಿರು ನಾಟ್ಯನಿಲಯವ
ನಾ ಮದಾಂಧಗೆ ನುಡಿದು ಬಂದೆನು
ತಾಮಸವ ಮಾಡದಿರು ಹೂಡದಿರಲ್ಪಬುದ್ಧಿಗಳ
ಕಾಮುಕನನಡೆಗೆಡಹಿ ನಿಜ ಸು
ಪ್ರೇಮವನು ತೋರೆನಲು ನಗುತು
ದ್ದಾಮನೆದ್ದನು ಘಳಿಯನುಟ್ಟನು ಮಲ್ಲಗಂಟಿನಲಿ ೨೯

ಖಳನ ಮುರಿಯೆಂದಬಲೆ ನೊಸಲಲಿ
ತಿಲಕವನು ರಚಿಸಿದಳು ಸೇಸೆಯ
ತಳಿದಳೇರಿಸಿ ತಿಗುರ ಗೆಲಿದಳು ಹಿಣಿಲ ಹೊಸ ಪರಿಯ
ಬಲುಭುಜನ ಹರಸಿದಳು ಕಗ್ಗ
ತ್ತಲೆಯ ಹಬ್ಬುಗೆಯೊಳಗೆ ನಾಟ್ಯದ
ನಿಳಯ ಮಧ್ಯದ ಮಣಿಯ ಮಂಚದ ಮೇಲೆ ಪವಡಿಸಿದ ೩೦

ಉರಿವ ಮಾರಿಯ ಬೇಟದಾತನು
ತುರುಗಿದನು ಮಲ್ಲಿಗೆಯ ಮೊಗ್ಗೆಯ
ನಿರಿಕಿ ತಾ ಪೂಸಿದನು ಸಾದು ಜವಾಜಿ ಕತ್ತುರಿಯ
ಮೆರೆವ ಗಂಡುಡಿಗೆಯನು ರಚಿಸಿದ
ಸೆರಗಿನೊಯ್ಯಾರದಲಿ ಸುರಗಿಯ
ತಿರುಹುತಿರುಳೊಬ್ಬನೆ ನಿಜಾಲಯದಿಂದ ಹೊರವಂಟ ೩೧

ಕಾಲ ಪಾಶದಲೆಳಸಿಕೊಂಬ ಕ
ರಾಳಮತಿ ಸುಡುಗಾಡಲೈತಂ
ದಾಲಯುವ ಹೊಕ್ಕನು ಕೃತಾಂತನ ಬಾಯ ಹೊಗುವಂತೆ
ಮೇಲೆ ಮೇಲವಶಕುನ ಶತಕವ
ನಾಲಿಸದೆ ಸುಮ್ಮಾನದಲಿ ಕೇ
ಡಾಳಿ ಬಂದನು ಮಂಚವಿದ್ದೆಡೆಗಾಗಿ ತಡವರಿಸಿ ೩೨

ವನಜಮುಖಿ ವೀಳೆಯುವನನುಲೇ
ಪನವ ಮಲ್ಲಿಗೆಯರಳ ತೊಡಿಗೆಯ
ನನುಪಮಾಂಬರವಿವೆ ಮನೋಹರವಹರೆ ಚಿತ್ತೈಸು
ನಿನಗೆ ಪಾಸಟಿಯಾನುಯೆನ್ನವೊ
ಲನಿಮಿಷರೊಳಾರುಂಟು ಚೆಲುವರು
ಮನುಜರೆನ್ನನು ಹೋಲುವರೆ ಸೈರಂಧ್ರಿ ಕೇಳೆಂದ ೮೩

ಎನ್ನವೋಲ್ ಪುರುಷರಲಿ ಚೆಲುವರ
ಮುನ್ನ ನೀ ಕಂಡರಿದೆಯಾದೊಡೆ
ಯೆನ್ನ ಮೇಲಾಣೆಲೆಗೆ ಹುಸಿಯದೆ ಹೇಳು ಹೇಳೆಂದು
ಮುನ್ನ ನಿನ್ನಂತಪ್ಪ ಸತಿಯರು
ಎನ್ನನೇ ಬಯಸುವರು ನಾರಿಯ
ರೆನ್ನ ಕಂಡರೆ ಸೋಲದವರಿಲ್ಲೆಲೆಗೆ ನಿನ್ನಾಣೆ ೮೪

ಎಲವೊ ಕೀಚಕ ನಿನ್ನ ಹೋಲುವ
ಚೆಲುವರಿಲ್ಲಂತಿರಲಿ ಲೋಕದ
ಲಲನೆಯರ ಪರಿಯಲ್ಲ ತನ್ನಯ ರೂಪು ಬೇರೊಂದು
ಇಳೆಯೊಳೆನಗೆಣೆಯಿಲ್ಲ ನಿನಗಾ
ನೊಲಿದು ಬಂದೆನು ತನ್ನ ಪರಿಯನು
ಬಳಿಕ ನೋಡಾ ಬೇಗ ತೋರುವೆನೆಂದನಾ ಭೀಮ ೮೫

ಎನಗೆ ಪುರುಷರು ಸೋಲದವರಿ
ಲ್ಲೆನಗೆ ಪಾಸಟಿ ನೀನು ನಿನಗಾ
ಮನವೊಲಿದೆ ನೀ ನೋಡು ತನ್ನಯ ಹೆಣ್ಣುತನದನುವ
ಎನಲು ಹರುಷದಲುಬ್ಬಿ ಕೀಚಕ
ನನಿಲಜನ ಮೈದಡವಿ ವೃತ್ತ
ಸ್ತನವ ಕಾಣದೆ ಹೆದರಿ ಬಳಿಕಿಂತೆಂದನವ ನಗುತ ೮೬

ಎಲೆಗೆ ಕಲು ಮೈಯಾದೆ ಕಡುಗೋ
ಮಲತೆಯೆತ್ತಲು ಕರ್ಕಶಾಂಗದ
ಬಲುಹಿದೆತ್ತಲು ಮಾಯ ವೇಷವ ಧರಿಸಿದೆಯೋ ಮೇಣು
ತಿಳುಹೆನಲು ಕೇಳೆಲವೊ ಪರ ಸತಿ
ಗಳುಪಿದಾತಂಗಮೃತ ವಿಷ ಕೋ
ಮಲತೆ ಕರ್ಕಶವಹುದೆನುತ ತುಡುಕಿದನು ಮುಂದಲೆಯ ೮೭

ಚಪಳೆ ಫಡ ಹೋಗೆನುತ ಹಾಯ್ದನು
ಕೃಪಣಮತಿ ಮುಂಗೈಯಲನಿಲಜ
ನಪರಭಾಗಕೆ ಹಾಯ್ದು ಹಿಡಿದನು ಕೀಚಕನ ತುರುಬ
ವಿಪುಳಬಲ ಕಳವಳಿಸಿದನು ಕಡು
ಕುಪಿತನಾದನು ಹೆಂಗುಸಲ್ಲಿವ
ನಪಸದನು ತೆಗೆ ಕರುಳನೆನುತೊಳಹೊಕ್ಕು ಹೆಣಗಿದನು ೮೮

ಶಿವಿದನವನುರವಣಿಸಿ ಮಾರುತಿ
ಕವಿದು ಹೆಣಗಿದನಡಸಿ ಹೊಯ್ದೊಡೆ
ಬವರಿಯಲಿ ಟೊಣದೌಕಿದೊಡೆ ಮಡ ಮುರಿಯದೊಳಹೊಕ್ಕು
ಸವಡಿ ಮಂದರದಂತೆ ಕೀಚಕ
ಪವನಸುತರೊಪ್ಪಿದರು ಭೀಮನ
ಯುವತಿ ನಗುತಾಲಿಸುತಲಿದ್ದಳು ಹೊಯ್ಲ ಹೋರಟೆಯ ೮೯

ಎರಗಿದೊಡೆ ಕೀಚಕನ ಗಾಯಕೆ
ತರವರಿಸಿ ಕಲಿಭೀಮ ಮಂಡಿಸಿ
ಮರೆವಡೆದು ಮುರಿದೆದ್ದು ರೋಷದಲೌಡನೊಡೆಯುಗಿದು
ಬರಸಿಡಿಲು ಪರ್ವತದ ಶಿಖರವ
ನೆರಗುವಂತಿರೆ ಖಳನ ನೆತ್ತಿಯ
ನೆರಗಿದನು ರಣಧೀರನುನ್ನತ ಬಾಹುಸತ್ವದಲಿ ೯೦

ಅರಿಯ ಮುಷ್ಟಿಯ ಗಾಯದಲಿ ತಲೆ
ಬಿರಿಯೆ ತನು ಡೆಂಡಣಿಸಿ ಕಂಗಳು
ತಿರುಗಿ ಜೋಲಿದು ಮೆಲ್ಲ ಮೆಲ್ಲನೆಯುಸುವ ಪಸರಿಸುತ
ಕೆರಳಿ ಕರಿ ಕೇಸರಿಯ ಹೊಯ್ದುರೆ
ತಿರುಗುವಂತಿರೆ ಭೀಮಸೇನನ
ಬರಿಯ ತಿವಿದನು ಬೀಳೆನುತ ಖಳರಾಯ ಹಲು ಮೊರೆದ ೯೧

ತಿರುಗಿ ಪೈಸರವೋಗಿ ಪವನಜ
ಮರಳಿ ತಿವಿದನು ಕೀಚಕನ ಪೇ
ರುರವನೆದೆ ಜರ್ಝರಿತವಾಗಲು ಕಾರಿದನು ಕರುಳ
ಬಿರಿದವಾಲಿಗಳೊಲೆದೊಲೆದು ಕ
ಣ್ಣುರುಗಿ ಧೊಪ್ಪನೆ ಕೆಡೆದು ನಿಮಿಷಕೆ
ಹೊರಳಿ ಹರಣವ ಕಳುಹಿ ಕಳೆದುದು ಕಾಯ ಕೀಚಕನ ೯೨

ತಲೆಯನೆದೆಯೊಳಗಿಕ್ಕಿ ಕೈ ಕಾ
ಲ್ಗಳನು ಬಸುರೊಳು ಸಿಕ್ಕಿ ದೂರಕೆ
ತೊಲಗಿದನು ತೋರಿದನು ರಮಣಿಗೆ ಕೀಚಕನ ಹದನ
ಖಳನ ಕಾಲನ ಕೋಣ ತುಳಿದಂ
ತಿಳೆಯೊರಗಿರೆ ಕಂಡು ಕಾಮಿನಿ
ಕಳಕಳಿಸಿದಳು ಭೀಮಸೇನನಪ್ಪಿ ಮುಂಡಾಡಿ ೯೩

ತರುಣಿ ಬಿಡು ಸಾರೆನುತ ಪವನಜ
ಸರಿದನತ್ತಲು ದ್ರುಪದನಂದನೆ
ಕರೆದು ನುಡಿದಳು ಕಾಹಿನವರಿಗೆ ಕೀಚಕನ ಹದನ
ದುರುಳ ಬಲುಹಿಂದೆನ್ನನೆಳೆದೊಡೆ
ಕೆರಳಿದರು ಗಂಧರ್ವರೀತಗೆ
ಹರುವ ಕಂಡರು ನೋಡಿಯೆನೆ ಹರಿತಂದರವಳೊಡನೆ ೯೪

ಅರಸಿ ಕೈದೀವಿಗೆಯಲವನಿಹ
ಪರಿಯ ಕಂಡರು ಕಾಹಿನವದಿರು
ಹರಿದು ಹೇಳಿದರಾತನನುಜಾತರಿಗೆ ಬೇಗದಲಿ
ಕರದಿ ಬಾಯ್ಗಳ ಹೊಯ್ದು ಹೃದಯದೊ
ಳುರಿ ಚಡಾಳಿಸೆ ಬಿಟ್ಟ ಮಂಡೆಯೊ
ಳರದೆ ಬಂದರು ಕೀಚಕನ ಸೋದರರು ಬಾಯ್ಬಿಡುತ ೯೫

ಆರು ಗತಿಯೆಮಗಕಟ ಕೀಚಕ
ವೀರ ದೇಶಿಗರಾದೆವಾವಿ
ನ್ನಾರ ಸೇರುವೆವೆನುತ ಹಲುಬಿದವರನ ತಕ್ಕೈಸಿ
ಕ್ರೂರಕರ್ಮರು ನಿನ್ನ ಕೊಂದವ
ರಾರು ಹಾ ಹಾಯೆನುತ ಹಲುಬಲು
ವಾರಿಜಾನನೆ ಮುಗುಳುನಗೆಯಲಿ ನೋಡಿದಳು ಖಳರ ೯೬

ಇವಳಿಗೋಸುಗವಳಿದನೇ ಸಹ
ಭವನು ತಪ್ಪೇನೆನುತ ನಡುವಿರು
ಳವದಿರೈತಂದರುಹಿದರು ವೈರಾಟ ರಾಯಂಗೆ
ಅವಳನಾತನ ಕೂಡೆ ಕಳುಹುವೊ
ಡೆವಗೆ ನೇಮವೆಯೆಂದು ಬೀಳ್ಕೊಂ
ಡವರು ಮರಳಿದು ಬಂದು ಹಿಡಿದರು ಕಮಲಲೋಚನೆಯ ೯೭

ತೆಗೆದು ಮಂಚದಲವನ ಹೆಣನನು
ಬಿಗಿದರವಳನು ಕಾಲ ದೆಸೆಯಲಿ
ನಗುವುದಿನ್ನೊಮ್ಮೆನುತ ಕಟ್ಟಿದರವರುಕಾಮಿನಿಯ
ಬೆಗಡುಗೊಂಡಂಭೋಜಮುಖಿಯು
ಬ್ಬೆಗದೊಳೊದರಿದಳಕಟಕಟ ಪಾ
ಪಿಗಳಿರಾ ಗಂಧರ್ವರಿರ ಹಾಯೆನುತ ಹಲುಬಿದಳು ೯೮

ಕೇಳಕಟ ಜಯನೇ ಜಯಂತನೆ
ಕೇಳು ವಿಜಯ ಜಯೋದ್ಭವನೆ ನೀ
ಕೇಳು ಜಯಸೇನನೆ ದುರಾತ್ಮಕರೆನ್ನನೆಳೆದೊಯ್ದು
ಬೀಳಿಸುವರಗ್ನಿಯಲಿ ನೀವಕ
ಟೇಳಿ ತಡವೇಕೆನುತ ಮೊರೆಯಿಡೆ
ಕೇಳಿದನು ಕಲಿಭೀಮ ಸತಿಯಾಕ್ರಂದನ ಧ್ವನಿಯ ೯೯

ಈ ದುರಾತ್ಮರಿಗಗ್ರಜನ ಸಾ
ವೈದದೇ ತಮ್ಮಣ್ಣನಲ್ಲಿಗೆ
ಹೊಯ್ದು ಕಳುಹಲು ಬೇಕಲಾ ಕುನ್ನಿಗಳನೀ ಕ್ಷಣಕೆ
ಬೈಯ್ದು ಫಲವೇನೆಂದು ಮಾರುತಿ
ಹಾಯ್ದು ಝಂಕಿಸಿ ರುದ್ರಭೂಮಿಯು
ನೆಯ್ದಿದನು ಫಡಯೆನುತ ಕೊಂಡನು ಮುರಿದು ಹೆಮ್ಮರನ ೧೦೦

ಎಲೆಲೆ ಗಂಧರ್ವಕನ ಹೆಂಗುಸ
ಕಳಚಿ ಬಿಡಿರೋ ಪಾಪಿ ಹೋಗಲಿ
ಕೊಲೆಗಡಿಗನಿವನೆನುತ ಹೆಣನನು ಬಿಸುಟು ದೆಸೆದೆಸೆಗೆ
ತಲೆಗೆದರಿ ತೆಗೆದೋಡಿ ನಕ್ಕನು
ಕಳಕಳಿಸಿ ಕಲಿಭೀಮನೆಲೆ ನಾ
ಯ್ಗಳಿರ ಹೋದೊಡೆ ಬಿಡುವೆನೇ ಹಾಯೆನುತ ಕೈಕೊಂಡ ೧೦೧

ತಿರುಹಿದನು ಹೆಮ್ಮರನನವದಿರ
ನರೆದು ನಿಟ್ಟೊರೆಸಿದನು ದೆಸೆ ದೆಸೆ
ಗೊರಲಿ ಚಿಮ್ಮುವ ಚಪಲರನು ಬೆಂಬತ್ತಿ ಬರಿಕೈದು
ಕುರಿದರಿಯ ಮಾಡಿದನು ನೂರೈ
ವರನು ಕೊಂದನು ಮರನ ಹಾಯಿಕಿ
ಮರಳಿ ಮಿಣ್ಣನೆ ಬಂದು ಹೊಕ್ಕನು ಬಾಣಸದ ಮನೆಯ ೧೦೨

ಸುಳಿಯಲಮ್ಮದು ಪೌರಜನವಿವ
ರಳಿವ ವಚನಿಸಲಮ್ಮದೀಕೆಯು
ನಲುಕಲಮ್ಮದು ನೋಡಲಮ್ಮದು ಮಂದಿ ಗುಜಂಗುಜಿಸಿ
ನಳಿನಮುಖಿ ನಸುನಗುತ ತಿಳಿಗೊಳ
ದೊಳಗೆ ಹೊಕ್ಕಳು ಮಿಂದು ಬೀದಿಗ
ಳೊಳಗೆ ಬರುತಿರೆ ಕಂಡು ಕೈಗಳ ಮುಗಿದುದಖಿಳಜನ ೧೦೩

ಈಕೆಗೋಸುಗವಳಿದನಕಟವಿ
ವೇಕಿ ಕೀಚಕನೆಂದು ಕೆಲಬರಿ
ದೇಕೆ ನಮಗೀ ಚಿಂತೆ ಶಿವಶಿವಯೆಂದು ಕೆಲಕೆಲರು
ನೂಕಿ ಕವಿದುದು ಮಂದಿ ಮಧ್ಯದೊ
ಳೀಕೆ ಮೆಲ್ಲನೆ ಬರುತಲಾ ಲೋ
ಕೈಕ ವೀರನ ಕಂಡಳಾ ಬಾಣಸಿನ ಬಾಗಿಲಲಿ ೧೦೪

ಮುಗುಳು ನಗೆಯಲಿ ಕಣ್ಣ ಕಡೆಯಲಿ
ವಿಗಡ ಭೀಮನ ನೋಡಿ ಕೈಗಳ
ಮುಗಿದೆವಾವ್ ಗಂಧರ್ವಪತಿಗೆ ನಮೋ ನಮೋಯೆನುತ
ಹೊಗರಿಡುವ ಹರುಷದಲಿ ರೋಮಾ
ಳಿಗಳ ಗುಡಿಯಲಿ ತನ್ನ ನಿಳಯಕೆ
ಮುಗುದೆ ಬಂದಳು ಸೂರ್ಯನಡರಿದನುದಯ ಪರ್ವತವ ೧೦೫

ಊರೊಳಗೆ ಗುಜುಗುಜಿಸಿ ವಾರ್ತಾ
ಭಾರ ಮಸಗಿತು ನೆರೆದ ನೆರವಿಯೊ
ಳಾರ ಬಾಯ್ಗಳೊಳಾದೊಡೆಯು ಜಪವಾಯ್ತು ಜನಜನಿತ
ಭೂರಿ ಚಿಂತಾತುರ ವಿರಾಟನು
ಮಾರಿಯೋ ಸೈರಂಧ್ರಿಯೋ ಈ
ನಾರಿಯಿರಬೇಡೆಂದು ತನ್ನಯ ಸತಿಗೆ ನೇಮಿಸಿದ ೧೦೬

ಅಳಲು ಕೈಮಿಗಲಾ ವಿರಾಟನ
ಲಲನೆ ಸೈರಂಧ್ರಿಯನು ಕರೆಸಿದ
ಳೆಲೆ ಮಹಾತುಮೆ ತಾಯೆ ನಿಮಗಂಜುವೆವು ಶರಣೆನುತ
ಹೊಳಲೊಳಿದ್ದರೆ ಭೀತಿ ಘನ ನೀ
ವೊಲಿದ ಠಾವಿಗೆ ಬಿಜಯ ಮಾಡುವು
ದುಳುಹಬೇಹುದು ತಮ್ಮನೆನಲಿಂತೆಂದಳಿಂದುಮುಖಿ ೧೦೭

ಎಮ್ಮದೇನಪರಾಧ ದೇವಿಯೆ
ನಿಮ್ಮ ತಮ್ಮನು ತಪ್ಪಿ ನಡೆದೊಡೆ
ಯೆಮ್ಮ ರಮಣರು ಸೈರಿಸದೆ ಸೀಳಿದರು ದುರ್ಜನರ
ನಿಮ್ಮ ನಾವೋಲೈಸಿ ಮರಳಿದು
ನಿಮ್ಮ ಕೆಡಿಸುವರಲ್ಲ ಧೂರ್ತರು
ತಮ್ಮ ಮತದಲಿ ತಾವೆ ಕೆಟ್ಟರು ನೀತಿಬಾಹಿರರು ೧೦೮

ತಾವು ತಮ್ಮಿಂದಳಿದರದು ಸಾ
ಕಾವು ನಿಮಗಂಜುವೆವು ನಿಮ್ಮಲಿ
ಯಾವುದೂ ತಪ್ಪಿಲ್ಲ ನೀವಿಲ್ಲಿರಲು ಬೇಡೆನಲು
ನಾವು ಮುನ್ನಿಹರಲ್ಲ ನಿಮ್ಮಯ
ಸೇವೆಯಲಿ ಹದಿಮೂರು ದಿವಸವು
ನೀವು ನೂಕಿದೊಡಿರದೆ ಮಾಣೆವು ದೇವಿ ಚಿತ್ತೈಸು ೧೦೯

ಅಳುಕದಿರಿ ಹದಿಮೂರು ದಿವಸವ
ಕಳೆದ ಬಳಿಕೆಮಗೆಲ್ಲ ಲೇಸಹು
ದಳಿದು ಹೋದರು ದುಷ್ಟರಾದವರಿನ್ನು ಭಯಬೇಡ
ಕಲಹದವರಾವಲ್ಲೆನುತ ನಿಜ
ನಿಳಯವನು ಸಾರಿದಳು ದುರುಪದಿ
ಗಳಿಗೆ ಗಳಿಗೆಗೆ ಕೀಚಕನ ವೃತ್ತಾಂತ ಪಸರಿಸಿತು ೧೧೦

ನಾಲ್ಕನೆಯ ಸಂಧಿ

ಸೂ. ವಿಗ್ರಹಕೆ ಸಮತಳಿಸಿ ಕುರುಕುಲ
ದಗ್ರಣಿಯ ಮುಂಕೊಂಡು ದಕ್ಷಿಣ
ಗೋಗ್ರಹಣದಲಿ ಭೀಮ ಹಿಡಿದನು ಕಲಿ ಸುಶರ್ಮಕನ

ಕೇಳು ಜನಮೇಜಯ ಧರಿತ್ರೀ
ಪಾಲ ಕೌರವ ದೂತರವನಿಯ
ಮೇಲೆ ತೊಳಲುತಲರಸಿ ಕಾಣದೆ ಪಾಂಡು ನಂದನರ
ಹೋಲುವಿಕೆಯಿಂಬಿಡಿಯಲಾರದೆ
ಕಾಲ ಸವೆಯಲು ನಾಲ್ಕು ದಿಕ್ಕಿನ
ಮೂಲೆಯವರೈತಂದು ಬಿನ್ನವಿಸಿದರು ಕುರುಪತಿಗೆ ೧

ವಿತಳದೊಳು ಹೊಕ್ಕಿರಲಿಯಮರಾ
ವತಿಯೊಳಗೆ ಮೇಣಿರಲಿ ನಮ್ಮಾ
ಕ್ಷಿತಿಯೊಳಗೆ ಸುಳುಹಿಲ್ಲ ನೃಪ ಕುಂತೀಕುಮಾರಕರ
ಮತಿಯ ಹಬ್ಬುಗೆಯಿಂದ ನಾನಾ
ಗತಿಯೊಳಗೆ ಹೊಕ್ಕರಸಿದೆವು ಕುರು
ಪತಿಯೆ ಕೇಳ್ ನಿರ್ನಾಮರಾದರು ನಿನ್ನ ವೈರಿಗಳು ೨

ಎನಲು ನಸುನಗುತರಸ ಮನದಲಿ
ತನಗೆ ಹಗೆಯಿಲ್ಲೆಂದು ದೂತರ
ಮನವೊಲಿದು ಮನ್ನಿಸಿದ ನಾಲುಕು ಕಡೆಯ ವಾರ್ತೆಗಳ
ತನತನಗೆ ಮಂತ್ರಿಗಳು ಬೆಸಗೊಳ
ಲನಿತು ದೂತರೊಳೊಬ್ಬ ಕೀಚಕ
ಹನನವನು ವಿಸ್ತರಿಸಿದನು ಕುರುರಾಯನಿದಿರಿನಲಿ ೩

ಒಂದು ವಾರ್ತೆಯಲಾ ತ್ರಿಗರ್ತಾ
ನಂದಕರವಿದು ಜೀಯ ಕೀಚಕ
ವೃಂದವನು ಗಂಧರ್ವರಿರುಳೈತಂದು ಖಾತಿಯಲಿ
ಕೊಂದು ಹೋದರು ರಾವಣನ ವಿಧಿ
ಯಿಂದು ಕೀಚಕಗಾಯಿತೆನೆ ಕೇ
ಳ್ದೊಂದು ನಿಮಿಷ ಮಹೀಶ ಮೋನವ ಹಿಡಿದು ಬೆರಗಾದ ೪

ಹೇಳು ಹೇಳಿನ್ನೊಮ್ಮೆ ಮತ್ಸ್ಯನ
ತೋಳು ಮುರಿದುದೆ ಸುಭಟರೊಳು ಕ
ಟ್ಟಾಳು ಕೀಚಕ ಮಡಿದನೇ ಗಂಧರ್ವರಿರಿದವರೆ
ಮೇಲಣವರಿಗೆ ಮರ್ತ್ಯರಿಗೆ ಕೈ
ಕಾಲು ಮೆಟ್ಟಿನ ತೋಟಿಯೇತಕೆ
ಹೋಲದೋ ಹುಸಿ ಹೋಗೆನುತ ಮುಖದಿರುಹಿದನು ಭೂಪ ೫

ಅಹುದು ಜೀಯವಧರಿಸು ದಿವಿಜರ
ಮಹಿಳೆಯೋಲೈಸಿದಳು ಮತ್ಸ್ಯನ
ಮಹಿಳೆಯನು ಬಳಿಕಾಕೆಯೋಲಗದಲ್ಲಿ ಸತಿಯಿರಲು
ಕುಹಕಿ ಕಂಡಳುಪಿದರೆ ನಾಟ್ಯದ
ಗೃಹವ ಸೂಚನೆಗೊಟ್ಟು ನಿಮಿಷಕೆ
ರಹವ ಮಾಡಿದರವರು ಸವರಿದರಖಿಳ ಕೀಚಕರ ೬

ಅವನಿಪತಿ ಮೂಗಿನಲಿ ಕರ ಪ
ಲ್ಲವವನಿಟ್ಟನು ತಲೆಯ ತೂಗಿದ
ನವಳು ದುರುಪದಿ ಖಳರ ಕೊಂದವ ಭೀಮ ಗಂಧರ್ವ
ದಿವಿಜ ಸತಿಯೆತ್ತಲು ವಿರಾಟನ
ಭವನದೋಲಗವೆತ್ತಲದು ಪಾಂ
ಡವರ ಕೃತ್ರಿಮ ತಂತ್ರ ಮರೆಯಿರಿಗಾರರವರೆಂದ ೭

ಪರಿಮಳವ ಕದ್ದೋಡುವನಿಲನ
ಹರಿವ ಹೆಜ್ಜೆಯ ಹತ್ತುವರೆ ಮಧು
ಕರನೆ ಬಲ್ಲುದು ಜೀಯ ಬಲ್ಲಿರಿ ನಿಮ್ಮವರ ಪರಿಯ
ಹರದ ಮಾತಿನ ಹದನು ಬಳಿಕಾ
ಚರರಿಗಿದು ಗೋಚರಿಸುವುದೆಯೆಂ
ದರಸನನು ಕೊಂಡಾಡಿದರು ಮಂತ್ರಿಗಳು ತವತವಗೆ [illegible]

ಪ್ರೌಢಿಯಲ್ಲಿದು ಕೇಳಿ ಬಲ್ಲೆವು
ರೂಢಿಯಲಿ ಸಮಬಲರು ಭೀಮ ಸ
ಗಾಢದಲಿ ಬಲಭದ್ರ ಕೀಚಕ ಶಲ್ಯರೆಂಬವರು
ಗೂಢರನು ಗರುವಾಯಿಗೆಡಿಸಿಯೆ
ಗಾಢಿಕೆಯ ನೆರೆ ಮೆರೆಯಬೇಕೆನೆ
ರೂಢಿ ಸಮತಳಿಸಿತ್ತು ಸೇನೆಯ ನೆರಹಬೇಕೆಂದ ೯

ಕರೆಸಿದನು ಗಾಂಗೇಯ ಗರುಡಿಯ
ಗುರುವನಶ್ವತ್ಥಾಮ ಸೃಂಜಯ
ವರ ಕೃಪಾಚಾರಿಯನ ಸೈಂಧವ ಸೂರ್ಯನಂದನನ
ಬರಿಸಿದನು ತೆಂಕಣದ ದಿಗುತಟ
ದರಸುಗಳ ದೆಸೆಯಿಂದ ಬೇಹಿನ
ಚರರು ಬಂದರು ಕೇಳಿರೈ ಹೊಸ ವಾರ್ತೆಯನುಯೆಂದ ೧೦

ಭೀಮ ಕೀಚಕ ಶಲ್ಯನೀ ಬಲ
ರಾಮನೆಂಬೀ ನಾಲುವರು ಸಂ
ಗ್ರಾಮದೊಳು ಸರಿ ಖಚರರೆಂಬುದು ಬಯಲಿನಪವಾದ
ಭೀಮನಾಗಲು ಬೇಕು ಕೀಚಕ
ಕಾಮುಕನ ದುರುಪದಿಗೆ ಅಳುಪಿದ
ತಾಮಸನ ಹಿಡಿದೊರೆಸಿದವನೆಂದನು ಸುಯೋಧನನು ೧೧

ಮಾತು ಹೋಲುವೆಯಹುದು ನುಡಿದುದು
ನೀತಿ ಧರ್ಮಜನಿದ್ದ ದೇಶ
ವ್ರಾತದೊಳು ಬರನಿಲ್ಲ ಸವೆಯವು ಬೆಳೆದ ಬೆಳಸುಗಳು
ಬೀತ ಬನವಲ್ಲಿಲ್ಲ ಹುಸಿ ಕೊಲೆ
ಪಾತಕಾದಿಗಳಿಲ್ಲ ಸೊಂಪಿನ
ನೂತನದ ಸಿರಿಯೆಂದು ನುಡಿದನು ರಾಯ ಗಾಂಗೇಯ ೧೨

ಎಲ್ಲಿ ಲಕ್ಷ್ಮಿಯು ಬೀಡು ಧರಣಿಯೊ
ಳೆಲ್ಲಿ ಸೊಂಪಿನ ನಾಡು ನಗರದೊ
ಳೆಲ್ಲಿ ವಿಭವದ ಕಡಲು ಶೈತ್ಯದ ಸಾರ ಸೌರಂಭ
ಎಲ್ಲಿ ನೆಲಸಿಹುದಲ್ಲಿ ಪಾಂಡವ
ರಿಲ್ಲದಿರರಿನ್ನವರ ನೆಲೆಗಾ
ಬಲ್ಲಿ ಸಂಶಯವಿಲ್ಲವೆಂದನು ಭೀಷ್ಮ ನಸುನಗುತ ೧೩

ಅತ್ತ ಹಿಮಗಿರಿ ಮೇರೆ ಭಾವಿಸ
ಲಿತ್ತ ಮೂರು ಸಮುದ್ರ ಗಡಿಯಿಂ
ದಿತ್ತ ನಾನಾ ದೇಶವೆಂಬಿವು ಬರದ ಬೇಗೆಯುಲಿ
ಹೊತ್ತಿ ಹೊಗೆದವು ಮಧ್ಯದೇಶದ
ಲುತ್ತಮದ ಸಿರಿ ಫಲದ ಬೆಳಸುಂಗ
ಳೊತ್ತೆಯಿದು ಪಾಂಡವರ ಚಾವಡಿಯೆಂದನಾ ದ್ರೋಣ ೧೪

ಅವಧಿ ತುಂಬದ ಮುನ್ನಲೀ ಪಾಂ
ಡವರ ಕಾಣಿಸಿಕೊಂಬ ಮತ್ತಂ
ತವರು ಸತ್ಯಕೆ ನಡೆಯಬೇಹುದು ಮುನ್ನಿನಂದದಲಿ
ಅವರ ನೆಲೆಗಾಣಿಸುವ ಮಂತ್ರದ
ಹವಣನರುಪುವೆನೆಂದು ರವಿಸುತ
ನವನಿಪಗೆ ನಸುನಗುತ ನುಡಿದನು ರಾಜಕಾರಿಯವ ೧೫

ರಾಜಮಂದಿರದೊಳಗೆ ನೀತಿಗ
ಳೋಜೆಯಿಲ್ಲದ ಸಚಿವರಿಂ ನಿ
ರ್ವ್ಯಾಜದಲಿ ಕೇಡಹುದು ತಪ್ಪದು ಲೋಕವಾರ್ತೆಯಿದು
ಗಾಜಿ ಕೇವಣಿಸಿದರೆ ರಜತದ
ರಾಜಭೂಷಣವಹುದೆ ಕರ್ಣನ
ಬೀಜಮಂತ್ರಗಳಿಂದ ಕೇಡಹುದೆಂದನಾ ಭೀಷ್ಮ ೧೬

ಅವರು ಸತ್ಯಕೆ ನಡೆವರಲ್ಲದೆ
ಬವರಕಂಜುವರಲ್ಲ ಪಾಂಡವ
ರವಧಿ ಬೀಳ್ಕೊಳ ಬಂದುದೈ ನೀ ಸಮಯದೊಳಂ ಕರೆಸಿ
ಅವರ ಧರಣಿಯನವರಿಗಿತ್ತರೆ
ನಿವಗನಿಷ್ಟತೆಯಿಲ್ಲ ಕೇಳೆಲೆ
ಅವನಿಪತಿಯೆಂದೆನುತ ನುಡಿದನು ಮತ್ತೆ ಗಾಂಗೇಯ ೧೭

ನನ್ನಿ ನಿಮ್ಮಯ ನುಡಿಯ ಕೈಕೊಂ
ಡೆನ್ನ ಭೂಮಿಯನೀಯೆನಯ್ಯನ
ಬನ್ನಣೆಯ ಮಾತಿನ್ನು ಕೊಳ್ಳದು ಸಾಕು ಸಂಧಿಯನು
ಮನ್ನಿಸುತ ಮರುಳಾದೆನೀ ನಿ
ಷ್ಪನ್ನತೆಯ ಬೀಳ್ಕೊಂಡ ಪಾಂಡವ
ಗುನ್ನಿಗಳ ಗರುವಾಯ ಮಾಡುವಿರೆಂದು ಖಳ ನುಡಿದ ೧೮

ಅರಿ ವಿರಾಟನ ಪುರಕೆ ಹಾಯಿದು
ತುರು ಸೆರೆಯ ತೆಗೆಸುವೆವು ಪಾಂಡವ
ರಿರಲು ಧರ್ಮದ ಮೇರೆ ಮರ್ಯಾದೆಗಳ ಬಲ್ಲವರು
ಅರವರಿಸದಂಗೈಸುವರು ನಾ
ವರಿದು ಕೊಂಬೆವು ಬಳಿಕ ವನದಲಿ
ವರುಷ ಹದಿಮೂರಕ್ಕೆ ಕೊಡುವೆವು ಮತ್ತೆ ವೀಳೆಯವ ೧೯

ಒಳ್ಳಿತಿದು ನಿರ್ದೋಷ ನಿರ್ಣಯ
ವೆಲ್ಲರಭಿಮತವಹುದು ರಿಪುಗಳ
ಖುಲ್ಲವಿದ್ಯವನರಿವುಪಾಯಕೆ ಬೇರೆ ಠಾವಿಲ್ಲ
ಅಲ್ಲಿ ಪಾಂಡವರಿಹರು ಸಂಶಯ
ವಿಲ್ಲ ದೇಶದ ಸೊಂಪು ಸಿರಿ ಮ
ತ್ತೆಲ್ಲಿಯೂ ಹಿರಿದಿಲ್ಲ ನಿಶ್ಚಯವೆಂದನಾ ಕರ್ಣ ೨೦

ಗುರುವಿನಭಿಮತವಹಡೆ ಕೃಪ ಮೊಗ
ದಿರುಹದಿದ್ದೊಡೆ ಭೀಷ್ಮ ಮನದಲಿ
ಮುರಿಯದಿರ್ದೊಡೆ ಗುರುಕುಮಾರನ ಮತಕೆ ಸೇರುವೊಡೆ
ವರ ಶಕುನಿಯಹುದೆಂದೊಡಾ ಸೋ
ದರರು ತಪ್ಪಲ್ಲೆಂದರಾದೊಡೆ
ಅರಸ ನೆಗಳ್ದುದೆ ಮಂತ್ರವೆಂದು ಸುಶರ್ಮ ಹೊಗಳಿದನು ೨೧

ಮತವಹುದು ತಪ್ಪಲ್ಲ ಪಾಂಡವ
ಗತಿಯನರಿವೊಡೆ ಮಾರ್ಗವಿದು ಸ
ಮ್ಮತವು ನಿರ್ಮಳ ನೀತಿಕಾರರ ಮನಕೆ ಮತವಹುದು
ಅತಿ ಗಳಿತವಾಯ್ತುವಧಿ ದಿವಸ
ಸ್ಥಿತಿಯೊಳೈದಾರಾಗೆ ಬಳಿಕೀ
ಕ್ಷಿತಿಗೆ ಪಾಂಡವರುತ್ತರಾಯಿಗಳೆಂದನಾ ಭೀಷ್ಮ ೨೨

ಪರಿಗಣಿಸಿ ನೋಡಿದೊಡೆ ಮಾಡಿದ
ವರುಷ ತತಿಯೊಳಂ ಹೆಚ್ಚು ಕುಂದುಂ
ಟುರವಣಿಸಿ ಮಾಡುವುದು ನೆಗಳಿದ ರಾಜಕಾರಿಯವ
ಅರಿಯಲೇ ಬೇಕಾವ ಪರಿಯಿಂ
ದರಿದೆವಾದೊಡೆಯುತ್ತರೋತ್ತರ
ಧರಣಿ ಕುರುಪತಿಗೆಂದರಾ ದ್ರೋಣಾದಿ ನಾಯಕರು ೨೩

ಬೀಡು ನಡೆಯಲಿ ಮುಂದೆ ಮತ್ಸ್ಯನ
ನಾಡಿನೊಳು ಕಟಕಾಳಿ ದೂತರು
ಕೂಡೆ ಸಾರಲಿ ಕರೆಯಲಕ್ಷೋಹಿಣಿಯ ನಾಯಕರ
ಜೋಡಿಸಲಿ ಗುಡಿ ದಡ್ಡಿ ಚಂಪೆಯ
ಗೂಡಿ ಕೊಟ್ಟಿಗೆ ಬಂಡಿ ನಡೆಯಲಿ
ನಾಡ ಬಿಟ್ಟಿಗಳೆಂದು ಕೌರವರಾಯ ನೇಮಿಸಿದ ೨೪

ಹರಿದುದೋಲಗ ಮರುದಿವಸ ಗುಡಿ
ಹೊರಗೆ ಹೊಯ್ದವು ಸನ್ಮುಹೂರ್ತದೊ
ಳರಸ ಹೊರವಂಟನು ಸುಶರ್ಮಾದಿಗಳ ಗಡಣದಲಿ
ಸುರನದೀಸುತ ಕರ್ಣ ಕೃಪ ಗುರು
ಗುರುಸುತಾದಿ ಮಹಾ ಪ್ರಧಾನರು
ಕರಿತುರಗ ರಥಪತ್ತಿಯಲಿ ಹೊರವಂಟರೊಗ್ಗಿನಲಿ ೨೫

ಮೋಹರವ ಮೇಳೈಸಿದನು ನಿ
ರ್ವಾಹವನು ನಿಶ್ಚೈಸಿದನು ಮ
ತ್ತೂಹೆಕಾರರ ಮನವ ಸೋದಿಸಿಕೊಂಡು ತುರುಗೊಂಬ
ಸಾಹಸರನಟ್ಟಿದನು ವೈರಿಗ
ಳಾಹವಕೆ ನೆಲನಗಲದಲಿ ಬಲ
ಮೋಹಿಸಿತು ನೆರಸಿದನು ಬಹಳಾಕ್ಷೋಹಿಣೀ ಬಲವ ೨೬

ಕರಿಗಳಿಗೆ ಗುಳಬೀಸಿದವು ವರ
ತುರಗ ಪಲ್ಲಣಿಸಿದವು ತೇಜಿಯ
ತರಿಸಿ ರಥದಲಿ ಹೂಡಿ ಕೈದುವ ಸೆಳೆದು ಕಾಲಾಳು
ಅರಸನಿದಿರಲಿ ಮೋಹಿದುದು ಸೀ
ಗುರಿಯ ಸಬಳದ ಸಾಲಿನೊಳಗಂ
ಬರವ ಮುಸುಕಿತು ಧರಣಿ ತಗ್ಗಿತು ನೆರೆದುದಾ ಸೇನೆ ೨೭

ಆರತಿಗಳೆತ್ತಿದವು ತಳಿದು
ಪ್ಪಾರತಿಯ ಸೂಸಿದರು ಘನ ರಥ
ದೋರಣದ ಮಧ್ಯದಲಿ ಕೌರವರಾಯ ಕುಳ್ಳಿರಲು
ಸಾರಿದರು ಭಟ್ಟರು ಮಹಾ ನಾ
ಗಾರಿಗಳು ಬಿರುದಾವಳಿಯ ಕೈ
ವಾರಿಸುವ ಜಯರವದೊಡನೆ ನಿಸ್ಸಾಳ ಸೂಳೈಸೆ ೨೮

ಹೊಗೆದುದಂಬರವವನಿ ನಡುಗಿತು
ಗಗನಮಣಿ ಪರಿವೇಷದಲಿ ತಾ
ರೆಗಳು ಹೊಳೆದವು ಸುರಿದವರುಣಾಂಬುಗಳ ಧಾರೆಗಳು
ದಿಗುವಳಯದಲಿ ಧೂಮಕೇತುಗ
ಳೊಗೆದವೆನಲುತ್ಪಾತ ಕೋಟಿಯ
ಬಗೆಯದವನಿಪ ಪುರವ ಹೊರವಂಟನು ಸಗಾಢದಲಿ ೨೯

ಪಳಹರದ ಪಲ್ಲವದ ಪಸರದ
ಪಳಿಯ ಪಟ್ಟಿಯ ತೋಮರದ ಹೊಳೆ
ಹೊಳೆವ ಚಮರದ ಸೀಗುರಿಯ ಡೊಂಕಣಿಯ ತಿಂಥಿಣಿಯ
ಬಿಳುಗೊಡೆಯ ಝುಲ್ಲರಿಯ ಜೋಡಿಗ
ಳೊಳಗೆ ಗಗನವು ತೀವಿತೆನೆ ಹೆ
ಕ್ಕಳಿಸಿ ನಡೆದುದು ಸೇನೆ ಪಯಣದ ಮೇಲೆ ಪಯಣದಲಿ ೩೦

ರಾಯದಳ ನಡೆಗೊಂಡುದೊಗ್ಗಿನ
ನಾಯಕರು ಮನ್ನೆಯರು ರಾಜ ಪ
ಸಾಯಿತರು ಸಂವರಣೆ ಸೌರಂಭದಲಿ ಸಂದಣಿಸೆ
ತಾಯಿಮಳಲುಬ್ಬಳಿಸೆ ಜಲನಿಧಿ
ಬಾಯಬಿಡೆ ಗರ್ಜಿಸುವ ನಿಸ್ಸಾ
ಳಾಯತದ ಸೂಳೊದಗೆ ಪಯಣದ ಮೇಲೆ ಪಯಣದಲಿ ೩೧

ಸೆಳೆವ ಸಿಂಧದ ಕವಿವ ಹೀಲಿಯ
ವಳಯ ತೋಮರ ಚಮರ ಡೊಂಕಣಿ
ಗಳ ವಿಡಾಯಿಯಲಮಮ ಕೆತ್ತುದು ಗಗನವಳ್ಳಿರಿಯೆ
ಸುಳಿಯಲನಿಲಂಗಿಲ್ಲ ಪಥ ಕೈ
ಹೊಳಕಬಾರದು ರವಿಗೆ ನೆಲನೀ
ದಳವನಾನುವಡರಿದೆನಲು ಜೋಡಿಸಿತು ಕುರುಸೇನೆ ೩೨

ಪೊಡವಿ ಜಡಿದುದು ಫಣಿಯ ಹೆಡೆಗಳು
ಮಡಿದವಾಶಾದಂತಿಗಳು ತಲೆ
ಗೊಡಹಿದವು ಬಲದೊಳಗೆ ಮೊಳಗುವ ಲಗ್ಗೆವರೆಗಳಲಿ
ಕಡಲು ಮೊಗೆದುದು ರತುನವನು ನೆಲ
ನೊಡೆಯಲಗ್ಗದ ಸೇನೆ ಪಹಿಲದಿ
ನಡೆದು ಬರಲಾ ಧೂಳಿ ಮುಸುಕಿತು ರವಿಯ ಮಂಡಲವ ೩೩

ಪ್ರಳಯಪಟು ಜಲರಾಶಿ ಜರಿದುದೊ
ತಳಿತ ಸಂದಣಿಗಿಲ್ಲ ಕಡೆಯಿಾ
ದಳಕೆ ಮಾರ್ಮಲೆತಾರು ನಿಲುವವರಿಂದ್ರ ಯಮರೊಳಗೆ
ಹುಲು ನೃಪರಿಗೀಯೊಡ್ಡು ಗಡ ಈ
ಬಲುಹು ಹೊದರಿನ ಹೊರಳಿಯಿಾ ಕಳ
ಕಳಿಕೆಯೇಕೆನೆ ನೂಕಿದುದು ಕುರುಸೇನೆ ದಟ್ಟೈಸಿ ೩೪

ಎರಡು ಮೋಪರವಾಗಿ ತೆಂಕಲು
ಹರಿದು ತುರುಗಳ ತಡೆಯಿ ನಾವು
ತ್ತರದಲಾನುವೆವೆನುತ ನೃಪತಿ ತ್ರಿಗರ್ತನನು ಕಳುಹಿ
ಹುರಿಯೊಡೆದು ಹದಿನಾರು ಸಾವಿರ
ವರ ಮಹಾರಥರೊಗ್ಗಿನಲಿ ದು
ರ್ಧರ ಸುಶರ್ಮನು ಧಾಳಿಯಿಟ್ಟನು ತೆಂಕ ದೆಸೆಗಾಗಿ ೩೫

ಅಸಿತ ಪಕ್ಷಾಷ್ಟಮಿಯ ದಿನ ಸಂ
ಧಿಸಿದರಾಳೆದ್ದುದು ವಿರಾಟನ
ಪಶು ಸಮೂಹವ ಮುತ್ತಿದರು ಗೋಪಾಲಕರ ಕೆಡಹಿ
ಹೊಸ ಮುಖಕೆ ಸೀವರಿಸಿದವು ದೆಸೆ
ದೆಸೆಗೆ ಹಿಂಡುಗಳೊಡೆದು ಹಾಯ್ದವು
ಮಸಗಿತಂಬಾ ರವದ ಕಳವಳವಾಯ್ತು ನಿಮಿಷದಲಿ ೩೬

ಆಳು ಸುತ್ತಲು ಕಟ್ಟಿ ತುರುಗಳ
ಕೋಳಹಿಡಿದರು ಬೊಬ್ಬಿರಿದು ಗೋ
ಪಾಲರಾಂತರೆ ಕಾದಿದರು ಕಡಿಖಂಡಮಯವಾಗೆ
ಮೇಲೆ ಮೇಲೈತಪ್ಪ ಹೆಬ್ಬಲ
ದಾಳು ಕುದುರೆಯ ಕಂಡು ನೂಕದು
ಕಾಳಗವು ತಮಗೆನುತ ತಿರುಗಿತು ಗೋವರುಳಿದವರು ೩೭

ಮಿಸುಪ ಕಂಬಳಿಕೊಂಬು ಕಲ್ಲಿಯ
ಬಿಸುಟು ಗಾಯದಿ ಗೋವಳರು ಹೊ
ತ್ತಸುವ ಕೊರಳಲಿ ಹಿಡಿದು ನಾಲಗೆಯೊಣಗಿ ಢಗೆ ಹೊಯ್ದು
ವಿಷಮ ರಣಭೀತಿಯಲಿ ಕಂದಿದ
ಮುಸುಡ ತೊದಲಿನ ನುಡಿಯ ಮರಣದ
ದೆಸೆಯ ಕೈಸನ್ನೆಗಳ ಕಾತರರೈದಿದರು ಪುರವ ೩೮

ಬಸಿವ ನೆತ್ತರ ಗೋವರರಸಂ
ಗುಸುರಲಾರದೆ ಧೊಪ್ಪನಡೆಗಡೆ
ದಸುವ ಕಳೆದರು ಕೆಲರು ಕೆಲಬರು ತಮ್ಮ ಸಂತೈಸಿ
ಅಸಮ ಬಲವದು ಜೀಯ ಗೋವರ
ಕುಸುರಿದರಿದರುವತ್ತು ಸಾವಿರ
ಪಶು ಸಮೂಹವ ಹಿಡಿದರೆಂದರು ಮತ್ಸ್ಯಭೂಪತಿಗೆ ೩೯

ಕೇಳಿ ಬಿಸುಸುಯ್ದನು ವಿರಾಟ ನೃ
ಪಾಲನಿಂದಿನಲಳಿದನೇ ಕ
ಟ್ಟಾಳು ಕೀಚಕನೆನುತ ನೋಡಿದನಂದು ಕೆಲಬಲನ
ಆಳು ಗಜಬಜಿಸಿತ್ತು ಹಾಯಿಕು
ವೀಳೆಯವನಿಂದೆನಗೆ ತನಗೆಂ
ದೋಲಗದೊಳಬ್ಬರಣೆ ಮಸಗಿತು ಕದಡಿತಾಸ್ಥಾನ ೪೦

ಕೇಳಿ ಸಿಡಿಲೇಳಿಗೆಯುಲಿವ್ಪು ನೃ
ಪಾಲಕರು ಗಜಬಜಿಸಿ ರಭಸದೊ
ಳೋಲಗವ ಹೊರವಂಟು ನಡೆದರು ಭಾಷೆಗಳ ಕೊಡುತ
ಆಳು ಕೈದುವ ಕೊಂಡು ಕರಿಘಟೆ
ಮೇಳವಿಸಿ ಹಲ್ಲಣಿಸಿ ತೇಜಿಗ
ಳೋಳಿಯಲಿ ರಥ ಹೂಡಿ ಕವಿದುದು ಮತ್ಸ್ಯ ಪರಿವಾರ ೪೧

ಇವರು ತಮ್ಮೊಳಗೆಂದರರದು ನ
ಮ್ಮವರ ಬಲ ತುರುಗೊಂಡವರು ಕೌ
ರವರು ನಮ್ಮ ಪರೀಕ್ಷೆಗೋಸುಗ ಬಂದ ಹದನಹುದು
ಅವಧಿ ತೀರದ ಮುನ್ನ ಕಾಣಿಸಿ
ನಮಗೆ ಬಳಿಕಾರಣ್ಯವಾಸವ
ನಿವರು ಕರುಣಿಸ ಬಂದರೆಂದನು ಧರ್ಮನಂದನನು ೪೨

ಅವಧಿ ತೀರಲಿ ಮೇಣು ಮಾಣಲಿ
ಎವಗೆ ತುರು ಹುಯ್ಯಲನು ಕೇಳಿದು
ಕಿವಿಯುಲುದಕವ ಕೊಂಡಡಾ ಪಾತಕವನೆಣಿಸುವೊಡೆ
ಎವಗೆ ನೂಕದು ಸಾಕದಂತಿರ
ಲವರ ಬೆಂಬಳಿವಿಡಿದು ವರ ಗೋ
ನಿವಹವನು ಮರಳಿಚುವೆನೆಂದನು ಧರ್ಮನಂದನನು ೪೩

ಎಂದು ತಮ್ಮಂದಿರು ಸಹಿತ ಯಮ
ನಂದನನು ಕಲಹಾವಲೋಕಾ
ನಂದ ಪರಿಕರಲುಳಿತ ಕೋಮಲ ಕಾಯನನುವಾಗಿ
ಬಂದು ಮತ್ಸ್ಯನ ನೇಮದಲಿ ನಡೆ
ತಂದು ರಥವೇರಿದನು ಪಾರ್ಥನ
ಹಿಂದಕಿರಿಸಿ ವಿರಾಟನೊಡನವನೀಶ ಹೊರವಂಟ ೪೪

ವರ ವಿರಾಟ ಸಹೋದರರು ಸಾ
ವಿರದ ಸಂಖ್ಯೆಯು ರಾಜಪುತ್ರರು
ಕೊರಳ ಪದಕವ ಕಾಲ ತೊಡರಿನ ಮಣಿಯ ಮೌಳಿಗಳ
ಪರಿಮಳದ ಕತ್ತುರಿಯ ತಿಲಕದ
ಹೊರೆದ ಗಂಧದ ತೋರ ಮುಡುಹಿನ
ಕರದ ಖಂಡೆಯುರದಟರ್ರೈದಿದರಾನೆ ಕುದುರೆಯಲಿ ೪೫

ತೂಳುವರೆಗಳ ಲಗ್ಗೆಯಲಿ ಕೆಂ
ಧೂಳು ಮಸಗಿ ವಿರಾಟ ಭೂಪತಿ
ಯಾಳು ಕವಿತರೆ ಕಂಡು ಸೈರಿಸಿ ತುರುವ ಹಿಂದಿಕ್ಕಿ
ಕಾಳಗವ ಕೊಟ್ಟರು ಛಡಾಳಿಸಿ
ಸೂಳವಿಸಿ ನಿಸ್ಸಾಳ ದಿಕ್ಕಿನ
ಮೂಲೆ ಬಿರಿಯೆ ವಿರಾಟಬಲ ಹಳಚಿದುದು ಪರಬಲವ ೪೬

ಘಡ ವಿರಾಟನ ಚುಕ್ಕಿಗಳಿರವ
ಗಡಿಸದಿರಿ ಸಾಯದಿರಿ ಬಿರುದರ
ಹೆಡತಲೆಯ ಹಾವಾದ ಕೀಚಕನಳಿದನಿನ್ನೇನು
ಮಿಡುಕಿ ಕಟಕವ ಹೊಕ್ಕು ನರಿ ಹಲು
ಚಿಡುವವೊಲು ವೈರಾಟ ಕೆಟ್ಟನು
ಕಡೆಗೆನುತ ಕೈವೊಯ್ದು ನಕ್ಕುದು ಕೂಡೆ ಕುರುಸೇನೆ ೪೭

ಕುದುರೆ ಹೊಕ್ಕುವು ದಂತಿ ಘಟೆ ತೂ
ಳಿದವು ರಥವಾಜಿಗಳು ಸೇನೆಯು
ಹೊದರ ಹೊಯ್ದವು ಕೂಡೆ ಕಾಲಾಳಿರಿದು ಕಾದಿದರು
ಕದಡಿತಾ ದಳ ಮೈಯೊಳೊಕ್ಕವು
ಬಿದಿರಿದೆಲುಗಳು ಮುರಿದು ನೆತ್ತಿಯ
ಮಿದುಳು ಸುರಿದುದು ನೆತ್ತರುಬ್ಬರಿಸಿದುದು ನೆರೆ ಮಸಗಿ ೪೮

ದಿಂಡುಗೆಡೆದವು ದಂತಿಘಟೆ ಶತ
ಖಂಡವಾದವು ತುರಗದಳ ಮುಂ
ಕೊಂಡಿರಿದು ಕಾಲಾಳು ಕೆಡೆದವು ತಾರುಥಟ್ಟಿನಲಿ
ತುಂಡಿಸಿತು ರಥವಾಜಿ ಮಿದುಳಿನ
ಜೊಂಡಿನಲಿ ರಣಭೂಮಿ ರಕುತದ
ಗುಂಡಿಗೆಗಳೊಗ್ಗಾಯ್ತು ಶಾಕಿನಿ ಡಾಕಿನೀ ಜನಕೆ ೪೯

ಚೂಳಿಕೆಯ ಬಲ ಮುರಿದು ದೊರೆಗಳ
ಮೇಲೆ ಬಿದ್ದುದು ಬವರ ಬಳಿಕೆ
ಚ್ಚಾಳುತನದಲಿ ಹೊಕ್ಕು ದುವ್ವಾಳಿಸುವ ನಿಜರಥದ
ಮೇಲು ದಳ ಕವಿದುದು ಮಹಾರಥ
ರೇಳು ಸಾವಿರ ಮತ್ಸ್ಯ ಭೂಪನ
ಕಾಳಗಕೆ ತೆಗೆದರು ತ್ರಿಗರ್ತರ ಸೇನೆ ಮುರಿವಡೆದು ೫೦

ಬಲ ಮುರಿದು ಬರುತಿರಲು ಖಾತಿಯ
ತಳೆದು ವೀರ ಸುಶರ್ಮನಂಬಿನ
ಮಳೆಯ ಕರೆವುತ ರಿಪು ವಿರಾಟನ ರಥವ ತರುಬಿದನು
ಎಲವೊ ಘಡ ಘಡ ಮತ್ಸ್ಯ ಹುಲುಮಂ
ಡಳಿಕ ನಿನಗೇಕಾಳುತನವೆಂ
ದುಲಿದು ಕೈಕೊಂಡೆಚ್ಚು ಕಾದಿದನಾ ವಿರಾಟನಲಿ ೫೧

ಸರಳು ತೀರಲು ಕಿತ್ತು ಸುರಗಿಯ
ತಿರುಹಿ ಹೊಯ್ದಾಡಿದರು ಮುರಿದೊಡೆ
ಪರಿಘದಲಿ ಕಾದಿದರು ಹೊಕ್ಕರು ಹಲಗೆ ಖಡ್ಗದಲಿ
ಬೆರಸಿ ತಿವಿದಾಡಿದರು ಮತ್ಸ್ಯನ
ಭರವ ಹೊಗಳುತ ಕಲಿ ಸುಶರ್ಮಕ
ನುರವಣಿಸಿದನು ಗಾಯವಡೆದು ವಿರಾಟನನು ಹಿಡಿದ ೫೨

ಸಿಕ್ಕಿದನು ದೊರೆಯೊಪ್ಪುಗೊಟ್ಟರು
ಚುಕ್ಕಿಗಳು ಕೀಚಕನ ನೆಳಲಿರೆ
ಸಿಕ್ಕಲೀಸುವನೇ ವಿರಾಟನೆನುತ್ತ ಬಲ ಬೆದರೆ
ಉಕ್ಕಿದಾತನ ಹೆಗಲು ಬೇವುದು
ಮಕ್ಕಳಾಟಿಕೆಯಾಯ್ತು ತಾ ಕೈ
ಯಿಕ್ಕಲೇಕೆಂದೊದರಿದರು ಮತ್ಸ್ಯನ ಸಹೋದರರು ೫೩

ಬಲವನಾಯಕವಾಯ್ತು ಮತ್ಸ್ಯನ
ಕುಲಕೆ ಬಂದುದು ಕೇಡು ಸುಮ್ಮನೆ
ನಿಲುವುದನುಚಿತ ಭೀಮ ಬಿಡಿಸು ವಿರಾಟ ಭೂಪತಿಯ
ಗೆಲವು ಪರಬಲಕಾಯಿತೆನೆ ರಿಪು
ಕುಲದವಾನಳಣ್ಣನಾಜ್ಞೆಯ
ತಲೆಯೊಳಾಂತನು ಮುಂದಣಾಲದ ಮರನ ನೋಡಿದನು ೫೪

ಹೆಮ್ಮರವನಿದ ಕಿತ್ತು ವೈರಿ ಸು
ಶರ್ಮಕನನೊರೆಸುವೆನು ಬವರದೊ
ಳೊಮ್ಮೆಯರಿ ಮೋಹರವನರೆವೆನು ಜೀಯ ಚಿತ್ತೈಸು
ತಮ್ಮ ಸೈರಿಸು ಮರನ ಮುರಿಯದಿ
ರೆಮ್ಮ ಮಾತನು ಕೇಳು ಹೊಲ್ಲೆಹ
ವೆಮ್ಮ ತಾಗದೆ ಮಾಣದೆಂದನು ಧರ್ಮನಂದನನು ೫೫

ಮರನ ಮುರಿದೊಡೆ ನಮ್ಮನರಿವನು
ಕುರುಕುಲಾಗ್ರಣಿಯಿಾಯಮಾನುಷ
ಪರಮ ಸಾಹಸ ಭೀಮಸೇನಂಗಲ್ಲದಿಲ್ಲೆಂದು
ಅರಿಕೆಯಹುದೆನೆ ಭೀಮನೆಂದನು
ಕುರುಕುಲಾಗ್ರಣಿ ಸಹಿತಿದೆಲ್ಲವ
ನೊರೆಸಿ ಕಳೆದೊಡೆ ಬಳಿಕ ನಮಗಾರುಂಟು ಮುನಿವವರು ೫೬

ಉಗ್ರಕರ್ಮವ ನೆನೆಯಬೇಡ
ವ್ಯಗ್ರದಲಿ ಸಾಧಿಸಿದೆವವಧಿ ಸ
ಮಗ್ರವನು ಸಾಕಿನ್ನು ಬಿಡಿಸು ವಿರಾಟ ಭೂಪತಿಯ
ವಿಗ್ರಹವ ಜಯಿಸೆನಲು ಕುರು ಕುಲ
ದಗ್ರಿಯನು ಬೀಳ್ಕೊಂಡು ವಿಲಯ ಮ
ಹೋಗ್ರ ಸನ್ನಿಭನರೆದನಿಭ ಹಯರಥ ಪದಾತಿಗಳ ೫೭

ಸರಳ ಸಾರದಲೆಂಟು ಸಾವಿರ
ತುರಗವನು ಸೀಳಿದನು ಕೊಂದನು
ಕರಿಘಟೆಯನೈನೂರ ಮುರಿದನು ತೇರು ಸಾವಿರವ
ಅರಿ ಪದಾತಿಯನೊಂದು ಲಕ್ಕವ
ನೊರೆಸಿದನು ಬೆಂಬತ್ತಿ ಬಿಡು ಬಿಡು
ದೊರೆ ವಿರಾಟನನೆನುತ ಹಿಡಿದನು ಕಲಿ ಸುಶರ್ಮಕನ ೫೮

ವಲಲ ಮೆಚ್ಚಿದೆನೈ ಮಹಾದೇ
ವಲಘು ಸಾಹಸಿ ತನ್ನ ಬಿಡಿಸಿದೆ
ಸಿಲುಕಿದನು ಹಗೆಯೆನುತ ಬೋಳೈಸಿದ ವಿರಾಟ ನೃಪ
ಬಳಿಕ ಯಮನಂದನನು ಬಿಡಿಸಿದ
ಕಲಿ ಸುಶರ್ಮನನಿರುಳುಗಾಳಗ
ದೊಳಗೆ ತುರುಮುರಳಿದವು ಗೆಲಿದರು ಪಾಂಡುನಂದನರು ೫೯

ನೀವೆಯರಸುಗಳಿನ್ನು ನಿಮ್ಮಯ
ಸೇವೆಯಲಿ ತಾನಿಹೆನು ನಾಲ್ವರಿ
ದಾವ ದೇಶದ ವೀರರೋ ಕಂಕಾದಿ ಭಟರೆನುತ
ಆ ವಿರಾಟನು ನುಡಿಯೆ ಸನ್ಮಾ
ನಾವಲಂಬಕೆ ತುಷ್ಟನಾದೆನು
ಭಾವಿಪೊಡೆ ಧರೆ ನಮ್ಮದೆಂದನು ಧರ್ಮನಂದನನು ೬೦

ಮಾನಭಂಗದ ಮೇಲೆ ಕೌರವ
ಸೇನೆ ಸರಿಯೆ ಸುಶರ್ಮ ಕಡು ದು
ಮ್ಮಾನದಿಂದಲೆ ಮುಸುಕಿನಲಿ ತಿರುಗಿದನು ಪಾಳಯಕೆ
ಭಾನು ಭುವನದ ಜನದ ನಿದ್ರಾ
ಮೌನ ಮುದ್ರೆಯನೊಡೆದನುತ್ತರ
ಧೇನು ವಿಗ್ರಹಣವನು ಮಾಡಿದನಂದು ಕುರುರಾಯ ೬೧

ಐದನೆಯ ಸಂಧಿ

ಸೂ. ವೈರಿಭಟ ಸಂವರ್ತನೂತನ
ಭೈರವನು ಕಲಿಪಾರ್ಥ ಸಮರೋ
ದ್ಧಾರ ಸಾರಥಿಯಾದನಂದು ವಿರಾಟ ನಂದನಗೆ

ಕೇಳು ಜನಮೇಜಯ ಸುಯೋಧನ
ನಾಳು ಮುತ್ತಿತು ತುರುಗಳನು ಮೇ
ಲಾಳು ಕವಿದುದು ಭೀಷ್ಮ ಕರ್ಣ ದ್ರೋಣ ಮೊದಲಾಗಿ
ಕೋಲ ಸೂಟಿಯ ಸರಿವಳೆಗೆ ಗೋ
ಪಾಲ ಪಡೆ ಮುಗ್ಗಿದುದು ಗೋವರ
ಸಾಲ ಹೊಯ್ದರು ಕರ್ಣ ದುಶ್ಶಾಸನ ಜಯದ್ರಥರು ೧

ರಾಯ ಚೂಣಿಯ ಚಾತುರಂಗದ
ನಾಯಕರು ಮೇಳವಿಸಿ ಸಮರೋ
ಪಾಯದಲಿ ಹಿಂದಿಕ್ಕಿ ಕವಿದರು ಕೋಡಕೈಯವರು
ಸಾಯಲಲಸದ ಗೋವರನು ಕೈ
ಗಾಯದೆಸುತವೆ ಸೆರೆಯ ಕೊಂಡರು
ಮಾಯವಾಯಿತು ಹರಿಬಕಾರರ ಸೇನೆ ರಣದೊಳಗೆ ೨

ಮೇಲುದಳಕಿದಿರಾಗಿ ಬರೆ ಹರಿ
ಗಾಳಗದೊಳೊಡೆಮುರಿದು ಗೋವರು
ಧೂಳಿಗೋಟೆಯಗೊಂಡರಮರರ ರಾಜಧಾನಿಗಳ
ಸಾಲರಿದು ಕೆಟ್ಟೋಡಿದರು ಗೋ
ಪಾಲನೊಬ್ಬನ ಹಿಡಿದು ಮೂಗಿನ
ಮೇಲೆ ಸುಣ್ಣವ ಬರೆದು ಬಿಟ್ಟರು ಹಗೆಯ ಪಟ್ಟಣಕೆ ೩

ಗರುವ ಗೋವರು ಹುಯ್ಯಲಿಗೆ ಹರಿ
ಹರಿದು ಕೆಡೆದರು ರಾಯ ಮೋಹರ
ತೆರಳಿ ತುರುಗಳ ಹಿಡಿದು ಹಿಂದಿಕ್ಕಿದರು ಕಾಳಗಕೆ
ಬಿರುದರನು ಬರಹೇಳು ಹೋಗೆನೆ
ಕರದ ಬಿಲ್ಲನು ಬಿಸುಟು ಬದುಕಿದ
ಶಿರವ ತಡವುತ ಗೋವನೊಬ್ಬನು ಪುರಕೆ ಹರಿತಂದ ೪

ಗಣನೆಯಿಲ್ಲದು ಮತ್ತೆ ಮೇಲಂ
ಕಣದ ಭಾರಣೆ ನೂಕಿತೆಲವೋ
ರಣದ ವಾರ್ತೆಯದೇನೆನುತ ಜನವೆಲ್ಲ ಗಜಬಜಿಸೆ
ರಣವು ಕಿರಿದಲ್ಲೆನುತ ಢಗೆ ಸಂ
ದಣಿಸಲವನೈತಂದು ಮೇಳದ
ಗಣಿಕೆಯರ ಮಧ್ಯದಲಿ ಮೆರೆದಿರೆ ಕಂಡನುತ್ತರನ ೫

ಬೆಗಡು ಮುಸುಕಿದ ಮುಖದ ಭೀತಿಯು
ಢಗೆಯು ಹೊಯ್ಲಿನ ಹೃದಯ ತುದಿ ನಾ
ಲಗೆಯು ತೊದಳಿನ ನುಡಿಯ ಬೆರಗಿನ ಬರತ ತಾಳಿಗೆಯ
ಅಗಿವ ಹುಯ್ಯಲುಗಾರ ಬಹಳೋ
ಲಗಕೆ ಬಂದನು ನೃಪ ವಿರಾಟನ
ಮಗನ ಕಾಲಿಂಗೆರಗಿದನು ದೂರಿದನು ಕಳಕಳವ ೬

ಏಳು ಮನ್ನೆಯ ಗಂಡನಾಗು ನೃ
ಪಾಲ ಕೌರವ ರಾಯ ತುರುಗಳ
ಕೋಳ ಹಿಡಿದನು ಸೇನೆ ಬಂದುದು ಧರಣಿಯಗಲದಲಿ
ದಾಳಿ ಬರುತಿದೆ ಕರೆಸಿಕೋ ನಿ
ನ್ನಾಳು ಕುದುರೆಯ ರಾಣಿವಾಸದ
ಗೂಳೆಯವ ತೆಗೆಸೆಂದು ನುಡಿದನು ಬಿನ್ನಹದ ಬಿರುಬ ೭

ಏನೆಲವೊ ತುದಿ ಮೂಗಿನಲಿ ಬಿಳು
ಪೇನು ಢಗೆ ಹೊಯ್ದೇಕೆ ಬಂದೆಯಿ
ದೇನು ನಿನ್ನಿನ ರಣವನಯ್ಯನು ಗೆಲಿದುದೇನಾಯ್ತು
ಏನು ಭಯ ಬೇಡಿನ್ನು ಕಲಹನಿ
ಧಾನ ವಾರ್ತೆಯದೇನೆನಲು ಕುರು
ಸೇನೆ ಬಂದುದು ತುರುವ ಹಿಡಿದರು ಬಡಗ ದಿಕ್ಕಿನಲಿ ೮

ರಾಯ ತಾನ್ನೈತಂದನಾತನ
ನಾಯಕರು ಗುರುಸುತನು ಗುರು ಗಾಂ
ಗೇಯ ಶಕುನಿ ವಿಕರ್ಣ ಕರ್ಣ ಜಯದ್ರಥಾದಿಗಳು
ಜೀಯ ಬಿನ್ನಹ ದಳದ ತೆರಳಿಕೆ
ತಾಯಿಮಳಲಂಬುಧಿಗೆ ಮೋಹರ
ದಾಯತವ ನಾನೆತ್ತ ಬಲ್ಲೆನು ಹೊಕ್ಕು ಹೊಗಳುವರೆ ೯

ಎತ್ತ ದುವ್ವಾಳಿಸುವಡಾಲಿಗ
ಳತ್ತಲಾನೆಯ ಘಟ್ಟು ಕಾಲಾ
ಳೊತ್ತರದ ರಣವಾಜಿ ರೂಢಿಯ ರಾಯ ರಾವುತರು
ಸುತ್ತ ಬಳಸಿಹುದೆತ್ತ ಮನ ಹರಿ
ವತ್ತ ಮೋಹರವಲ್ಲದನ್ಯವ
ಮತ್ತೆ ಕಾಣೆನು ಜೀಯ ಹದನಿದು ವೈರಿ ವಾಹಿನಿಯ ೧೦

ಒಡ್ಡಿದರೊ ಪಡಿನೆಲನನವನಿಯ
ದಡ್ಡಿಯೋ ಮೇಣೆನಲು ಝಲ್ಲರಿ
ಯೊಪ್ಪು ತಳಿತುದು ಚಮರ ಸೀಗುರಿಗಳ ಪತಾಕೆಯಲಿ
ಅಡ್ಡ ಹಾಯ್ದಿನ ಕಿರಣ ಪವನನ
ಖಡ್ಡತನ ನಗೆಯಾಯ್ತು ಕೌರವ
ನೊಡ್ಡ ಸಭಿವರ್ಣಿಸುವಡರಿಯೆನು ಜೀಯ ಕೇಳೆಂದ ೧೧

ಒಳಗೆ ನೀ ಕಾದುವೊಡೆ ದುರ್ಗವ
ಬಲಿಸು ಬವರಕೆ ಹಿಂದುಗಳೆಯದೆ
ನಿಲುವ ಮನ ನಿನಗೀಗಲುಂಟೇ ನಡೆಯಬೇಕೆನಲು
ಕೆಲಬಲನ ನೋಡಿದನು ಮಿಾಸೆಯ
ನಲುಗಿದನು ತನ್ನಿದಿರ ಮೋಹದ
ಲಲನೆಯರ ಮೊಗ ನೋಡುತುತ್ತರ ಬಿರುದ ಕೆದರಿದನು ೧೨

ನೂಕು ಕುನ್ನಿಯುನಾಹವದ ಭೀ
ತಾಕುಳನು ತಾನೀಗ ಹೆಂಡಿರ
ಸಾಕಿ ಬದುಕುವ ಲೌಲ್ಯತೆಯುಲೊಟ್ಟೈಸಿ ಬಂದೆನಗೆ
ಕಾಕ ಬಳಸುವನಿವನು ತಾನು
ದ್ರೇಕಿಸಿಯೆ ಸಮರದಲಿ ನಿಲಲು ಪಿ
ನಾಕಧರನಿಗೆ ನೂಕದೆಂದನು ಸತಿಯರಿದಿರಿನಲಿ ೧೩

ಎನಿತು ಬಲ ಘನವಾದೊಡೇನದು
ನಿನಗೆ ಗಹನವೆ ಜೀಯ ಜಗದಲಿ
ದಿನಪನಿದಿರಲಿ ದಿಟ್ಟತನವೇ ತಮದ ಗಾವಳಿಗೆ
ಬಿನುಗು ರಾಯರ ಬಿಂಕ ಗೋವರ
ಮೊನೆಗೆ ಮೆರೆದೊಡೆ ಸಾಕು ನಿಂದಿರು
ಜನಪ ತೋರಿಸು ಕೈಗುಣವ ಕೌರವನ ಥಟ್ಟಿನಲಿ ೧೪

ಎಂದಡುಬ್ಬರಿಸಿದನು ತಾ ಕಲಿ
ಯೆಂದು ಬಗೆದನು ಮಿಾಸೆಯನು ಬೆರ
ಳಿಂದ ತಿರುಹುತ ಮುಗುಳುನಗೆ ಹರುಷದಲಿ ಮೈಮರೆದ
ಸಂದಣಿಸಿ ರೋಮಾಂಚ ಕೆಲಬಲ
ದಿಂದುಮುಖಿಯರ ನೋಡಿದನು ನಲ
ವಿಂದ ನುಡಿದನು ತನ್ನ ಪೌರುಷತನದ ಪರಿಣತೆಯ ೧೫

ಅಹುದಹುದು ತಪ್ಪೇನು ಜೂಜಿನ
ಕುಹಕದಲಿ ಪಾಂಡವರ ಸೋಲಿಸಿ
ಮಹಿಯ ಕೊಂಡಂತೆನ್ನ ಕೆಣಕಿದನೇ ಸುಯೋಧನನು
ಸಹಸದಿಂದವೆ ತುರುವ ಮರಳಿಚಿ
ತಹೆನು ಬಳಿಕಾ ಕೌರವನ ನಿ
ರ್ವಹಿಸಲೀವೆನೆ ಸೂರೆಗೊಂಬೆನು ಹಸ್ತಿನಾಪುರವ ೧೬

ಹಿಡಿದು ರಾಜ್ಯವ ಕೊಂಡು ಹೆಂಗುಸ
ಬಡಿದು ಪಾಂಡವ ರಾಯರನು ಹೊರ
ವಡಿಸಿ ಕೊಬ್ಬಿದ ಭುಜಬಲವನೆನ್ನೊಡನೆ ತೋರಿದನೆ
ಬಡ ಯುಧಿಷ್ಠಿರನೆಂದು ಬಗೆದನೆ
ಕಡುಗಿದೊಡೆ ಕೌರವನ ಕೀರ್ತಿಯ
ತೊಡೆವೆನರಿಯನಲಾಯೆನುತ ಸುಕುಮಾರ ಖತಿಗೊಂಡ ೧೭

ತನಗೆ ಬಡ ಪಾಂಡವರ ತೆವರಿದ
ಮನದ ಗರ್ವದ ಕೊಬ್ಬು ಕಾಲನ
ಮನೆಯನಾಳ್ವಿಪುದಲ್ಲದಿದ್ದೊಡೆ ತನ್ನ ವೈರವನು
ನೆನೆದು ದುರ್ಯೋಧನನು ತಾ ಮೇ
ದಿನಿಯನಾಳ್ವನೆ ಹಾ ಮಹಾ ದೇ
ವೆನುತಲುತ್ತರ ಬಿರುದ ನುಡಿದನು ಹೆಂಗಳಿದಿರಿನಲಿ ೧೮

ಜವನ ಮಿಾಸೆಯ ಮುರಿದನೋ ಭೈ
ರವನ ದಾಡೆಯನಲುಗಿದನೊ ಮೃ
ತ್ಯುವಿನ ಮೇಲುದ ಸೆಳೆದನೊ ಕೇಸರಿಯ ಕೆಣಕಿದನೊ
ಬವರವನು ತೊಡಗಿದನಲಾ ಕೌ
ರವನಕಟ ಮರುಳಾದನೆಂದಾ
ಯುವತಿಯರ ಮೊಗ ನೋಡುತುತ್ತರ ಬಿರುದ ಕೆದರಿದನು ೧೯

ಆರೊಡನೆ ಕಾದುವೆನು ಕೆಲಬರು
ಹಾರುವರು ಕೆಲರಂತಕನ ನೆರೆ
[illegible] ಕೆಲರಧಮ [illegible]
ವೀರರೆಂಬವರಿವರು ಮೇಲಿ
ನ್ನಾರ ಹೆಸರುಂಟವರೊಳೆಂದು ಕು
ಮಾರ ನೆಣಗೊಬ್ಬಿನಲಿ ನುಡಿದನು ಹೆಂಗಳಿದಿರಿನಲಿ ೨೦

ಪೊಡವಿಪತಿಗಳು ಬಂದು ತುರುಗಳ
ಹಿಡಿವರೇ ಲೋಕದಲಿ ಅಧಮರ
ಬಡಮನದ ಮನ್ನೆಯರ ಮೈಸಿರಿ ಕೌರವನೊಳಾಯ್ತು
ಕಡೆಗೆ ದುರಿಯಶವುಳಿವುದಲ್ಲದೆ
ಬಿಡುವೆನೇ ಗೋಧನವನೆನ್ನೊಳು
ತೊಡಕಿ ಬದುಕುವನಾವನೆಂದನು ಖಂಡೆಯವ ಜಡಿದು ೨೧

ಖಳನ ಮುರಿವೆನು ಹಸ್ತಿನಾಪುರ
ದೊಳಗೆ ಠಾಣಾಂತರವನಿಕ್ಕುವೆ
ತೊಲಗಿಸುವೆ ಕೌರವನ ಸೇನೆಯ ಧೂಳಿಪಟ ಮಾಡಿ
ಗೆಲವ ತಹೆನೆಂದುತ್ತರನು ಕೋ
ಮಲೆಯರಿದಿರಲಿ ಬಾಯ್ಗೆ ಬಂದುದ
ಗಳುಹುತಿದ್ದನು ಬೇಕು ಬೇಡೆಂಬವರ ನಾ ಕಾಣೆ ೨೨

ಅರಿಯನೇ ಗಾಂಗೇಯನನು ತಾ
ನರಿಯದವನೇ ದ್ರೋಣ ಕುಲದಲಿ
ಕೊರತೆಯೆನಿಸುವ ಕರ್ಣನೆಂಬವನೆನಗೆ ಸಮಬಲನೆ
ಬರಿಯ ಬಯಲಾಡಂಬರದಿ ಬರಿ
ತುರುವ ಹಿಡಿದೊಡೆ ತನ್ನ ಹೆಂಡಿರ
ಸೆರೆಯ ತಾರದೆ ಮಾಣೆನೆಂದನು ನಾರಿಯರ ಮುಂದೆ ೨೩

ನುಡಿದು ಫಲವೇನಿನ್ನು ಸಾರಥಿ
ಮಡಿದ ನಿನ್ನಿನ ಬವರದಲಿ ತಾ
ನುಡುಹನಾದೆನು ಶಿವ ಶಿವಾಯಿಂದೆನ್ನ ಕೈಮನಕೆ
ಗಡಣಿಸುವ ಸಾರಥಿಯನೊಬ್ಬನ
ಪಡೆದೆನಾದೊಡೆ ಕೌರವೇಂದ್ರನ
ಪಡೆಗೆ ಹಬ್ಬವ ಮಾಡುವೆನು ತೋರುವೆನು ಕೈಗುಣವ ೨೪

ಸಾರಥಿಯ ಶಿವ ಕೊಟ್ಟನಾದೊಡೆ
ಮಾರಿಗುಬ್ಬಸವಾಗದಂತಕ
ನೂರು ತುಂಬದೆ ದೊಳ್ಳು ನೂಕದೆ ರಣ ಪಿಶಾಚರಿಗೆ
ದೋರೆಗರುಳಲಿ ದಾನವಿಯರೊಡ
ಲೇರು ಹತ್ತದೆ ಹಬ್ಬವಾಗದೆ
ಭೂರಿ ಬೇತಾಳರಿಗೆ ಹೋಹುದೆ ಬರಿದೆ ರಣವೆಂದ ೨೫

ಕೇಳಿದನು ಕಲಿಪಾರ್ಥನೀತನ
ಬಾಲ ಭಾಷೆಗಳೆಲ್ಲವನು ಪಾಂ
ಚಾಲೆಗೆಕ್ಕಟಿ ನುಡಿದ ನಾವಿನ್ನಿಹುದು ಮತವಲ್ಲ
ಕಾಲ ಸವೆದುದು ನಮ್ಮ ರಾಜ್ಯದ
ಮೇಲೆ ನಿಲುಕಲು ಬೇಕು ಕೌರವ
ರಾಳು ನವಗೋಸುಗವೆ ಬಂದುದು ಕಾಂತೆ ಕೇಳೆಂದ ೨೬

ನರನ ಸಾರಥಿಯೆಂದು ನೀನು
ತ್ತರೆಗೆ ಸೂಚಿಸಿ ತನ್ನನೀಗಳೆ
ಕರೆಸೆನಲು ಕೈಕೊಂಡು ದುರುಪದಿ ಬಂದಳೊಲವಿನಲಿ
ತರುಣಿ ಕೇಳರ್ಜುನನ ಸಾರಥಿ
ವರ ಬೃಹನ್ನಳೆ ಖಾಂಡವಾಗ್ನಿಯ
ಹೊರೆದನಿವ ತಾನೆಂದು ಸತಿಯುತ್ತರೆಗೆ ಹೇಳಿದಳು ೨೭

ಕೇಳಿ ಹರುಷಿತೆಯಾದಳುತ್ತರೆ
ಯೋಲಗಕೆ ಬಂದಣ್ಣನಂಘ್ರಿಗೆ
ಲೋಲಲೋಚನೆಯೆರಗಿ ಕೈಮುಗಿದೆಂದಳೀ ಹದನ
ಕೇಳಿದೆನು ಸಾರಥಿಯ ನೆಲೆಯನು
ಕಾಳಗಕೆ ನಡೆಯಣ್ಣದೇವ ನೃ
ಪಾಲಕರ ಜಯಿಸೆಂದಡುತ್ತರ ನಗುತ ಬೆಸಗೊಂಡ ೨೮

ತಂಗಿ ಹೇಳೌ ತಾಯೆ ನಿನಗೀ
ಸಂಗತಿಯನಾರೆಂದರಾವವ
ನಂಗವಣೆಯುಳ್ಳವನೆ ಸಾರಥಿತನದ ಕೈಮೆಯಲಿ
ಮಂಗಳವಲೇ ಬಳಿಕ ರಣದೊಳ
ಭಂಗನಹೆ ನಿನ್ನಾಣೆ ತನ್ನಯ
ತುಂಗ ವಿಕ್ರಮತನವನುಳುಹಿದೆ ಹೇಳು ಹೇಳೆಂದ ೨೯

ಎಂದಳೀ ಸೈರೇಂಧ್ರಿ ಸುರಪನ
ನಂದನವ ಸುಡುವಂದು ಪಾರ್ಥನ
ಮುಂದೆ ಸಾರಥಿಯಾದ ಗಡ ನಾವರಿಯೆವೀ ಹದನ
ಹಿಂದುಗಳೆಯದೆ ಕರೆಸು ನಮ್ಮ ಬೃ
ಹನ್ನಳೆಯನೆನೆ ನಗುತ ಲೇಸಾ
ಯ್ತೆಂದು ಪರಮೋತ್ಸಾಹದಲಿ ಸೈರೇಂಧ್ರಿಗಿಂತೆಂದ ೩೦

ಸಾರಥಿಯ ಕೊಟ್ಟೆನ್ನನುಳುಹಿದೆ
ವಾರಿಜಾನನೆ ಲೇಸು ಮಾಡಿದೆ
ಕೌರವನ ತನಿಗರುಳ ಬಗೆವೆನು ತಡವ ಮಾಡಿಸದೆ
ನಾರಿ ನೀನೇ ಹೋಗಿ ಪಾರ್ಥನ
ಸಾರಥಿಯ ತಾಯೆನಲು ನಮ್ಮನು
ವೀರ ಬಗೆಯನು ನಿಮ್ಮ ತಂಗಿಯ ಕಳುಹಿ ಕರೆಸುವುದು ೩೧

ತಾಯೆ ನೀನೇ ಹೋಗಿ ಸೂತನ
ತಾಯೆನಲು ಕೈಕೊಂಡು ಕಮಲ ದ
ಳಾಯತಾಕ್ಷಿ ಮನೋಭವನ ಮರಿಯಾನೆಯಂದದಲಿ
ರಾಯಕುವರಿ ನವಾಯಿ ಗತಿ ಗರು
ವಾಯಿಯಲಿ ಬರೆ ವಿಟರ ಕರಣದ
ಲಾಯ ತೊಡಕಿತು ತೆಗೆದಳಂಗನೆ ಜನರ ಕಣ್ಮನವ ೩೨

ಐದು ಶರವೇಕೊಂದು ಬಾಣವಿ
ದೈದದೇಯಿನ್ನಮಮ ಕಾಮನ
ಕೈದುಗಾರತನಕ್ಕೆ ಕೋಡದೆ ಕೊಂಕದಿಹರಾರು
ಒಯ್ದುಕೊಳ್ಳನೆ ಮುನಿ ಮನವನಡ
ಹಾಯ್ದು ಹಿಡಿಯನೆ ಹಿರಿಯರನು ವಿಧಿ
ಕೊಯ್ದನಕಟಾ ಕೊರಳನೆಂದುದು ನಗುತ ವಿಟನಿಕರ ೩೩

ಅರಳುಗಂಗಳ ಬೆಳಗು ಹೊಯ್ದು
ಬ್ಬರಿಸೆ ಚಿತ್ತದ ತಿಮಿರ ಹೆಚ್ಚಿತು
ಕುರುಳ ಕಾಳಿಕೆಯಿಂದ ಮುಖ ಬಿಳುಪೇರಿ ವಿಟಜನದ
ಸರಸತರ ಲಾವಣ್ಯ ರಸದಿಂ
ದುರಿ ಮಸಗೆ ಜನ ಹೃದಯದಲಿ ಮೈ
ಪರಿಮಳದ ಪಸರದಲಿ ಪದ್ಮಿನಿ ಬಂದಳೊಲವಿನಲಿ ೩೪

ನಡೆ ನಡೆಯ ಬಂಧಿಸಿತು ನೋಟವ
ನುಡಿಗಿಸಿತು ಕುಡಿನೋಟ ಸಖಿಯರ
ನುಡಿ ಸಮೇಳದ ಮಾತು ಮನುಜರ ಮಾತ ಮಾಣಿಸಿತು
ಕೆಡಿಸಿತಧರದ ರಾಗ ರಾಗವ
ಬಡತನವ ಹೆಚ್ಚಿಸಿತು ನಡುವಿನ
ಬಡತನವು ವಿಟಜನಕೆನಲು ನಡೆತಂದಳಿಂದುಮುಖಿ ೩೫

ಕುರುಳ ತಿದ್ದುತ ಮೊಲೆಗೆ ಮೇಲುದ
ಸರಿವುತೇಕಾವಳಿಯ ಮೆಲ್ಲನೆ
ತಿರುಹಿ ಹಾಯ್ಕುತ ಬಿಡುಮುಡಿಯನೆಡಗೈಯೊಳೊಂದಿಸುತ
ವರ ನಿಖಾರಿಯ ನಿರಿಯ ರಭಸದ
ಚರಣದಂದುಗೆ ದನಿಯ ಗಮನದ
ಭರದಿ ಕಿರು ಬೆಮರಿಡುತ ನಡೆತರುತಿರ್ದಳಿಂದುಮುಖಿ ೩೬

ಬರವ ಕಂಡನು ಪಾರ್ಥನೇನು
ತ್ತರೆ ಕುಮಾರಿ ಕಠೋರ ಗತಿಯಲಿ
ಬರವು ಭಾರಿಯ ಕಾರಿಯವ ಸೂಚಿಸುವುದೆನೆ ನಗುತ
ಬರವು ಬೇರಿಲ್ಲೆನ್ನ ಮಾತನು
ಹುರುಳುಗೆಡಿಸದೆ ಸಲಿಸುವೊಡೆ ನಿಮ
ಗರುಹಿದಪೆನೆನೆ ಮಾರಬಲ್ಲೆನೆ ಮಗಳೆ ಹೇಳೆಂದ ೩೭

ಪುರಕೆ ಹಾಯ್ದರು ಹಸ್ತಿನಾಪುರ
ದರಸುಗಳು ಹೊಲನೊಳಗೆ ಶತ ಸಾ
ವಿರದ ತುರುಗಳ ಹಿಡಿದರಳಿದುದು ಗೋಪ ಪಡೆ ಕಾದಿ
ಮುರಳಿಚುವೊಡೆಮ್ಮಣ್ಣ ದೇವನ
ಧುರಕೆ ಸಾರಥಿಯಿಲ್ಲ ನೀವಾ
ನರನ ಸಾರಥಿಯೆಂದು ಕೇಳಿದೆವೆಂದಳಿಂದುಮುಖಿ ೩೮

ಇನ್ನು ನೀವೇ ಬಲ್ಲಿರೆನೆ ನಡೆ
ನಿನ್ನ ಮಾತನು ಮಾರಬಲ್ಲೆನೆ
ಮುನ್ನ ಸಾರಥಿಯುಹೆನು ನೋಡುವೆನೆನುತ ವಹಿಲದಲಿ
ಚೆನ್ನಬಲೆಯನೈದಲಾ ಸಂ
ಪನ್ನ ಬಲನೋಲಗಕೆ ಬರೆ ಹರು
ಷೋನ್ನತಿಯಲುತ್ತರ ಕುಮಾರನು ಕರೆದು ಮನ್ನಿಸಿದ ೩೯

ಎಲೆ ಬೃಹನ್ನಳೆ ತೆತ್ತುದೆನಗ
ಗ್ಗಳೆಯರೊಳು ವಿಗ್ರಹವು ಸಾರಥಿ
ಯಿಳಿದನೆನ್ನವ ನೀನು ಸಾರಥಿಯಾಗಿ ಸಮರದಲಿ
ಉಳುಹ ಬೇಹುದು ನೀ ಸಮರ್ಥನು
ಫಲುಗುಣನ ಸಾರಥಿಯಲ್ಲೆ ನೀ
ನೊಲಿದು ಪಾಲ್ಗೊಳು ಕಾದಿ ತೋರುವೆನುತ ಸೇನೆಯಲಿ ೪೦

ಭರತ ವಿದ್ಯಾವಿಷಯದಲಿ ಪರಿ
ಚರಿಯತನ ನಮಗಲ್ಲದೀ ಸಂ
ಗರದ ಸಾರಥಿತನವ ಮರೆದೆವು ಹಲವು ಕಾಲದಲಿ
ಅರಿಭಟರು ಭೀಷ್ಮಾದಿಗಳು ನಿಲ
ಲರಿದು ಸಾರಥಿತನದ ಕೈಮನ
ಬರಡರಿಗೆ ದೊರಕೊಂಬುದೇ ರಣ ಸೂರೆಯಲ್ಲೆಂದ ೪೧

ಆನಿರಲು ಭೀಷ್ಮಾದಿಗಳು ನಿನ
ಗೇನ ಮಾಡಲು ಬಲ್ಲರಳುಕದೆ
ನೀನು ನಿಲು ಸಾಕೊಂದು ನಿಮಿಷಕೆ ಗೆಲುವೆನವರುಗಳ
ತಾನದಾರೆಂದರಿಯಲಾ ಗುರು
ಸೂನು ಕರ್ಣದ್ರೋಣರೆಂಬವ
ರಾನರಿಯದವರಲ್ಲ ಸಾರಥಿಯಾಗು ಸಾಕೆಂದ ೪೨

ವೀರನಹೆ ಬಳಿಕೇನು ರಾಜ ಕು
ಮಾರನಿರಿವೊಡೆ ಹರೆಯವಲ್ಲಾ
ಸಾರಥಿತ್ವವ ಮಾಡಿ ನೋಡುವೆ ರಥವ ತರಿಸೆನಲು
ವಾರುವದ ಮಂದಿರದಲಾಯಿದು
ಚಾರು ತುರಗಾವಳಿಯ ಬಿಗಿದನು
ತೇರ ಸಂವರಿಸಿದನು ರಥವೇರಿದನು ಕಲಿಪಾರ್ಥ ೪೩

ಮಂಗಳಾರತಿಯೆತ್ತಿದರು ನಿಖಿ
ಳಾಂಗನೆಯರುತ್ತರಗೆ ನಿಜ ಸ
ರ್ವಾಂಗ ಶೃಂಗಾರದಲಿ ಹೊಳೆವುತ ಬಂದು ರಥವೇರಿ
ಹೊಂಗೆಲಸಮಯ ಕವಚವನು ಪಾ
ರ್ಥಂಗೆ ಕೊಟ್ಟನು ಜೋಡು ಸೀಸಕ
ದಂಗಿಗಳನಳವಡಿಸಿ ರಾಜ ಕುಮಾರನನುವಾದ ೪೪

ನರನು ತಲೆ ಕೆಳಗಾಗಿ ಕವಚವ
ಸರಿವುತಿರೆ ಘೊಳ್ಳೆಂದು ಕೈ ಹೊ
ಯ್ದರಸಿಯರು ನಗೆ ನಾಚಿದಂತಿರೆ ಪಾರ್ಥ ತಲೆವಾಗಿ
ತಿರುಗಿ ಮೇಲ್ಮುಖವಾಗಿ ತೊಡಲು
ತ್ತರೆ ಬಳಿಕ ನಸುನಗಲು ಸಾರಥಿ
ಯರಿಯ ತಪ್ಪೇನೆನುತಲುತ್ತರ ತಾನೆ ತೊಡಿಸಿದನು ೪೫

ಕವಚವನು ತೊಡಲರಿಯದವನಾ
ಹವಕೆ ಸಾರಥಿತನವ ಮಾಡುವ
ಹವಣು ತಾನೆಂತೆನುತಲಿದ್ದರು ನಿಖಿಳ ನಾರಿಯರು
ಬವರವನು ನಮ್ಮಣ್ಣ ಗೆಲಿದಪ
ನವರ ಮಣಿ ಪರಿಧಾನವಾಭರ
ಣವನು ಸಾರಥಿ ಕೊಂಡು ಬಾಯೆಂದಳು ಸರೋಜಮುಖಿ ೪೬

ನಸುನಗುತ ಕೈಕೊಂಡರ್ಜುನ
ನೆಸಗಿದನು ರಥವನು ಸಮೀರನ
ಮಿಸುಕಲೀಯದೆ ಮುಂದೆ ಮಿಕ್ಕವು ವಿಗಡ ವಾಜಿಗಳು
ಹೊಸ ಪರಿಯ ಸಾರಥಿಯಲಾ ನಮ
ಗಸದಳವು ಸಂಗಾತ ಬರಲೆಂ
ದುಸುರದುಳಿದುದು ಹಿಂದೆ ಪುರದಲಿ ಚಾತುರಂಗ ಬಲ ೪೭

ಗತಿಗೆ ಕುಣಿದವು ನಾಸಿಕದ ಹುಂ
ಕ ತಿಯು ಪವನನ ಹಳಿವ ಲುಳಿಯಲಿ
ಗತಿಯ ಸಂಚಿತ ಪಂಚಧಾರಾ ಪ್ರೌಢ ವಾಜಿಗಳು
ವಿತತ ರಥ ಪದದಳಿತ ವಸುಧೋ
ತ್ಥ ತಿತ ಧೂಳೀಪಟಲ ಪರಿ ಚುಂ
ಬಿತ ದಿಶಾಮುಖನೈದಿದನು ಕುರುರಾಯ ಮೋಹರವ ೪೮

ಆರನೆಯ ಸಂಧಿ

ಸೂ. ಚಂಡ ರಿಪುಬಲ ವಿಲಯ ಹರನು
ದ್ದಂಡ ಬಲ ಶಸ್ತ್ರಾಸ್ತ್ರವನು ಕೈ
ಕೊಂಡು ಸುರಪನ ಸೂನು ನಡೆದನು ವೈರಿ ಮೋಹರವ

ಎಲೆ ಪರೀಕ್ಷಿತ ತನಯ ಕೇಳ್ ನೃಪ
ತಿಲಕನತಿ ವೇಗದಲಿ ರಥವನು
ಕೊಳುಗುಳಕೆ ತರೆ ಕಂಡನುತ್ತರ ಮುಂದೆ ದೂರದಲಿ
ತಳಿತ ಕುಂತದ ಬಾಯಿ ಧಾರೆಯ
ಹೊಳವುಗಳ ಹೊದರೆದ್ದ ಸಿಂಧದ
ಸೆಳೆಯ ಸೀಗುರಿಗಳ ಸುರಂಭದ ಸಕಲ ಮೋಹರವ ೧

ಕರಿಘಟಾವಳಿಯೊಡ್ಡುಗಲ್ಲಿನ
ತುರಗ ನಿಕರದ ತೆರೆಯ ತೇರಿನ
ಹೊರಳಿಗಳ ಸುಳಿಯಾತಪತ್ರದ ಬಹಳ ಬುದ್ಬುದದ
ನರನಿಕಾಯದ ಜಲಚರೌಘದ
ತರದ ವಾದ್ಯದ ಧ್ವನಿಯ ರವದು
ಬ್ಬರದೊಳಿದ್ದುದು ಬಹಳ ಜಲನಿಧಿಯಂತೆ ಕುರುಸೇನೆ ೨

ಜಡಿವ ಖಡ್ಗದ ಕಿಡಿಯ ಸೇನೆಯ
ಕಡುಹುಗಳ ಕೇಸುರಿಯ ಬಲದು
ಗ್ಗಡದ ರಭಸದ ರೌದ್ರರವ ಛಟಛಟಿತ ನಿಸ್ವನದ
ಇಡಿದ ಧೂಳಿಯ ಧೂಮ ರಾಶಿಯ
ಪಡೆ ವಿರಾಟನ ಮಗನ ಕಂಗಳಿ
ಗೊಡನೊಡನೆ ದಾವಾಗ್ನಿಯಂತಿರೆ ತೋರಿತಿದಿರಿನಲಿ ೩

ಪ್ರಳಯ ಮೇಘದ ಮಾತೃಕೆಯೊ ಕರಿ
ಕುಲವೊ ಸಿಡಿಲಿನ ಗರುಡಿಯೋ ಕಳ
ಕಳವೊ ಕಲ್ಪಾನಲನ ಧೂಮಾವಳಿಯೊ ಕೈದುಗಳೊ
ನೆಲನ ದಡ್ಡಿಯ ಬೆಟ್ಟದಡವಿಯೊ
ತಳಿತ ಟೆಕ್ಕೆಯವೋ ಜಗಂಗಳ
ನಳಿವ ಜಲಧಿಯೊ ಸೇನೆಯೋ ನಾವರಿಯೆವಿದನೆಂದ ೪

ಕಾಲಕೂಟದ ತೊರೆಯೊ ಮಾರಿಯ
ಗೂಳೆಯವೊ ಮೃತ್ಯುವಿನ ಗಂಟಲ
ತಾಳಿಗೆಯೊ ಭೈರವನ ಥಟ್ಟೋ ಜವನ ಜಂಗುಳಿಯೊ
ಕಾಲರುದ್ರನ ನೊಸಲ ವಹ್ನಿ
ಜ್ವಾಲೆಯೋ ಕೌರವನ ಸೇನಾ
ಜಾಲವೋ ಶಿವಯೆನುತ ಹೆದರಿದನಂದು ಸುಕುಮಾರ ೫

ಕಡೆಗೆ ಹಾಯುವು ಕಂಗಳೀ ಬಲ
ಗಡಲ ಮನವೀಸಾಡಲಾರದು
ವೊಡಲುವಿಡಿದಿರಲೇನ ಕಾಣಲು ಬಾರದದ್ಭುತವ
ಪೊಡವಿಯಿದುದೊ ಮೋಹರವನಿದ
ರೊಡನೆ ಕಾದುವನಾವನಾತನೆ
ಮೃಡನು ಶಿವ ಶಿವ ಕಾಲಿ ಗೆಲಿದೆವು ಬಲಕೆ ನಮೊಯೆಂದ ೬

ಹಸಿದ ಮಾರಿಯ ಮಂದೆಯಲಿ ಕುರಿ
ನುಸುಳಿದಂತಾದೆನು ಬೃಹನ್ನಳೆ
ಯೆಸಗದಿರು ತೇಜಿಗಳ ತಡೆ ಚಮ್ಮಟಿಗೆಯನು ಬಿಸುಡು
ಮಿಸುಕ ಬಾರದು ಪ್ರಳಯ ಕಾಲನ
ಮುಸುಕನುಗಿವವನಾರು ಕೌರವ
ನಸಮ ಬಲನೈ ರಥವ ಮರಳಿಚು ಜಾಳಿಸುವೆನೆಂದ ೭

ಎಲೆ ಕುಮಾರಕ ಮೊದಲ ಚುಂಬನ
ದೊಳಗೆ ಹಲು ಬಿದ್ದಂತೆ ಕಾಳಗ
ದೊಳಗೆ ಬೆರೆಯದ ಮುನ್ನ ಹಿಡಿದೈ ಸಮರ ಭೀತಿಯನು
ಅಳುಕಲಾಗದು ನಿಮ್ಮ ತಂದೆಯ
ಕುಲಕೆ ಕುಂದನು ತಾರದಿರು ಮನ
ಗೆಲವಿನಲಿ ಕಾದೆನುತ ರಥವನು ಬೇಗ ಹರಿಸಿದನು ೮

ಸಾರಿ ಬರ ಬರಲವನ ತನು ಮಿಂಗೆ
ಭಾರಿಸಿತು ಮೈ ಮುರಿದು ರೋಮ ವಿ
ಕಾರ ಘನ ಕಾಹೇರಿತವಯವ ನಡುಗಿ ಡೆಂಡಣಿಸಿ
ಭೂರಿ ಭಯ ತಾಪದಲಿ ತಾಳಿಗೆ
ನೀರುದೆಗೆದುದು ತುಟಿಯೊಣಗಿ ಸುಕು
ಮಾರ ಕಣ್ಣೆವೆ ಸೀಯೆ ಕರದಲಿ ಮುಚ್ಚಿದನು ಮುಖವ ೯

ಏಕೆ ಸಾರಥಿ ರಥವ ಮುಂದಕೆ
ನೂಕಿ ಗಂಟಲ ಕೊಯ್ವೆ ಸುಡು ಸುಡು
ಕಾಕಲಾ ಕಣ್ಣೊಡೆದವೇ ಕಾಣಾ ಮಹಾ ಬಲವ
ನಾಕನಿಳಯರಿಗರಿದು ನಿನಗೆ ವಿ
ವೇಕವೆಳ್ಳನಿತಿಲ್ಲ ತೆಗೆ ತೆಗೆ
ಸಾಕು ವಾಘೆಯ ಮರಳಿ ಹಿಡಿ ತೇಜಿಗಳ ತಿರುಹೆಂದ . ೧೦

ನುಡಿಯ ಕೇಳದೆ ಮುಂದೆ ಹತ್ತೆಂ
ಟಡಿಯನರ್ಜುನ ರಥವ ಹರಿಸಲು
ಹಿಡಿದ ಬಿಲ್ಲಂಬುಗಳು ಬಿದ್ದವು ಕೈಯನರೆ ತೆಗೆದು
ಹಿಡಿ ಹಯವನಿರಿಗಾರ ಸಾರಥಿ
ನುಡಿವವರು ನಾವ್ ಹಗೆಗಳೇ ನಿ
ನ್ನೊಡೆಯರಲ್ಲಾ ಸ್ವಾಮಿ ದುರುಹಿಕೆ ಲೇಸು ಲೇಸೆಂದ ೧೧

ಎಂದೊಡರ್ಜುನ ನಗುತ ರಥವನು
ಮುಂದೆ ನಾಲ್ಕೆಂಟಡಿಯ ನೂಕಲು
ಕೊಂದನೀ ಸಾರಥಿಯೆನುತ ಸಂವರಿಸಿ ಮುಂಜೆರಗ
ಬಂದು ಮೆಲ್ಲನೆ ರಥದ ಹಿಂದಕೆ
ನಿಂದು ಧುಮ್ಮಿಕ್ಕಿದನು ಬದುಕಿದೆ
ನೆಂದು ನಿಟ್ಟೋಟದಲಿ ಹಾಯ್ದನು ಬಿಟ್ಟಮಂಡೆಯಲಿ ೧೨

ನೋಡಿದನು ಕಲಿಪಾರ್ಥನೀ ಕೇ
ಡಾಡಿ ಕೆದರಿದ ಕೇಶದಲಿ ಕೆ
ಟ್ಟೋಡುತಿರಲೆಲೆ ಪಾಪಿ ಹಾಯ್ದನು ಹಿಡಿಯಬೇಕೆನುತ
ಕೂಡೆ ಸೂಟಿಯೊಳಟ್ಟಲಿಳೆಯ
ಲ್ಲಾಡಲಹಿಪತಿ ಹೆದರಲಿತ್ತಲು
ನೋಡಿ ಕೌರವ ಸೇನೆ ಕೆಡೆದುದು ನಗೆಯ ಕಡಲೊಳಗೆ ೧೩

ಎಲೆಲೆ ಕಾದಲು ಬಂದ ವೀರನ
ಬಲುಹ ನೋಡಾ ಶಿವ ಶಿವಾ ಬೆಂ
ಬಳಿಯಲಟ್ಟುವ ವೀರನಾವನೊ ಸುಭಟನಹನವನು
ತಿಳಿಯಲರಿದಿವನಾವನೋ ವೆ
ಗ್ಗಳೆಯನಹನಾಕಾರದಲಿ ನೆರೆ
ಫಲುಗುಣನ ಹೋಲುವನೆನುತ ಗಜಬಜಿಸಿತರಿ ಸೇನೆ ೧೪

ಈತ ಸಾರಥಿಯಳವಿಯಲಿ ಮಿಗು
ವಾತನುತ್ತರನರ್ಜುನಂಗೀ
ಸೂತತನವೆತ್ತಲು ನಪುಂಸಕವೇಷ ವೀಕ್ಷಿಸಲು
ಈತನನರ್ಜುನನಾಗಲಾ ಪುರು
ಹೂತನಾಗಲಿ ರಾಮನಾಗಲಿ
ಆತಡಿರಿವೆನು ಬರಲಿಯೆಂದನು ಖಾತಿಯಲಿ ಕರ್ಣ ೧೫

ಇತ್ತಲರ್ಜುನನುತ್ತರನ ಬೆಂ
ಬತ್ತಿ ಬಂದನು ಹೋದೆಯಾದರೆ
ಕಿತ್ತು ಬಿಸುಡುವೆ ನಿನ್ನ ತಲೆಯನು ನಿಲ್ಲು ನಿಲ್ಲೆನುತ
ಮತ್ತುವೋ ಸಾರಥಿಯೊ ಪಾಪಿಯ
ನೆತ್ತಣಿಂದವೆ ಮಾಡಿಕೊಂಡೆನೆ
ನುತ್ತ ಮರಳಿದು ನೋಡಿ ನಿಲ್ಲದೆ ಮತ್ತೆ ಸೈವರಿದ ೧೬

ಇಟ್ಟಣಿಸಿ ನರ ನೂರು ಹಜ್ಜೆಯೊ
ಳಟ್ಟಿ ಹಿಡಿದನಿದೇನ ಮಾಡಿದೆ
ಹುಟ್ಟಿದೆಯೊ ಹಾದರಕೆ ಕ್ಷತ್ರಿಯ ಬೀಜವೋ ನೀನು
ದಿಟ್ಟತನ ಮಿಗೆ ಹೆಂಗಳಿದಿರಲಿ
ಹೊಟ್ಟುಗುಟ್ಟಿದೆ ಹಗೆಗಳಿದಿರಲಿ
ಬಿಟ್ಟುಕೊಂಡೆ ದುರಾತ್ಮ ಮುರಿದೆ ವಿರಾಟನನ್ವಯವ ೧೭

ಹಲುಗಿರಿದು ಬಾಯೊಳಗೆ ಬೆರಳಿ
ಟ್ಟಳುಕಿ ತಲೆವಾಗಿದನು ಸಾರಥಿ
ಕಳುಹಿ ಕಳೆಯೈ ನಿನ್ನ ಬಸುರಲಿ ಮರಳಿ ಬಂದವನು
ಕೊಳುಗುಳದೊಳೀಯೊಡ್ಡ ಮುರಿವ
ಗ್ಗಳೆಯರುಂಟೇ ಲೋಗರಿಂದವೆ
ಕೊಲಿಸದಿರು ನೀ ಕುತ್ತಿ ಕೆಡಹು ಕಠಾರಿಯಿದೆಯೆಂದ ೧೮

ಮನದಲೊಡಲೊಡೆವಂತೆ ನಗುತ
ರ್ಜುನನು ಗಜರಿದನೆಲವೊ ಸಭೆಯಲಿ
ವನಜಮುಖಿಯರ ಮುಂದೆ ಸೊರಹಿದೆ ಬಾಯ್ಗೆ ಬಂದಂತೆ
ಅನುವರದೊಳೇನಾಯ್ತು ರಿಪು ವಾ
ಹಿನಿಯನಿರಿಯದೆ ನಾಡ ನರಿಯವೊ
ಲೆನಗೆ ನೀ ಹಲುಗಿರಿಯೆ ಬಿಡುವೆನೆ ಕಾದು ನಡೆಯೆಂದ ೧೯

ಹೇವ ಬೇಡಾ ವೀರರೀ ಪರಿ
ಜೀವಗಳ್ಳರ ಪಥವ ಹಿಡಿವರೆ
ಸಾವಿಗಂಜಿದೆವೇ ನಪುಂಸಕರೆಮ್ಮ ನೋಡೆನಲು
ನೀವು ವೀರರು ನೆರೆ ನಪುಂಸಕ
ರಾವು ಸಾವವರಲ್ಲ ಲೋಕದ
ಜೀವಗಳ್ಳರಿಗಾವು ಗುರುಗಳು ಬಿಟ್ಟು ಕಳುಹೆಂದ ೨೦

ಹರುಕನೇ ನೀನೆಲವೊ ರಾಯರೊ
ಳುರುವ ನೃಪ ನಿಮ್ಮಯ್ಯ ನೀನಿಂ
ದಿರಿದು ಮೆರೆವವಸರವಲಾ ಜವ್ವನದ ಧುರಭರವು
ಸರಿಗಳೆಯದಪಕೀರ್ತಿ ರವಿ ಶಶಿ
ಮುರಿದು ಬೀಳ್ವನ್ನಬರವೆಲೆ ನರ
ಗುರಿಯೆ ನಡೆ ಕಾಳಗಕೆನುತ ಹಿಡಿದೆಳೆದನುತ್ತರನ ೨೧

ಕೊಳುಗುಳದೊಳೋಡಿದೊಡೆ ಹಜ್ಜೆಗೆ
ಫಲ ಮಹಾ ಪಾತಕವು ಮುಂದಣಿ
ಗೊಲಿದು ಹಜ್ಜೆಯನಿಡಲು ಹಜ್ಜೆಯೊಳಶ್ವಮೇಧ ಫಲ
ಅಳಿದನಾದೊಡೆ ದೇವಲೋಕದ
ಲಲನೆಯರು ತೊತ್ತಿರು ಸುರೇಂದ್ರನು
ನೆಲನನುಗ್ಗಡಿಸುವನು ವೀರ ಸ್ವರ್ಗವಹುದೆಂದ ೨೨

ಧುರದಲೋಡಿದ ಪಾತಕವ ಭೂ
ಸುರರು ಕಳೆದಪರಶ್ವಮೇಧವ
ಧರಣಿಯಲಿ ಪ್ರತ್ಯಕ್ಷವಾಗಿಯೆ ಮಾಡಬಹುದೆಮಗೆ
ಸುರರ ಸತಿಯರನೊಲ್ಲೆವೆಮಗೆ
ಮ್ಮರಮನೆಯ ನಾರಿಯರೆ ಸಾಕೆ
ಮ್ಮರಸುತನವೆಮಗಿಂದ್ರ ಪದವಿಯು ಬಿಟ್ಟು ಕಳುಹೆಂದ ೨೩

ಆಳೊಳೊಡ್ಡುಳ್ಳವನು ಭಾರಿಯ
ತೋಳುಗಳ ಹೊತ್ತವನು ಮನೆಯಲಿ
ಸೂಳೆಯರ ಮುಂದೊದರಿ ಭಾಷ್ಕಳಗೆಡೆದು ಬಂದೀಗ
ಕೋಲನಿಕ್ಕದೆ ಗಾಯವಡೆಯದೆ
ಕಾಲು ವೇಗವ ತೋರಿದೊಡೆ ನಿ
ನ್ನೋಲಗದೊಳೆಂತಕಟ ನಾಚದೆ ಕುಳ್ಳಿತಿಹೆಯೆಂದ ೨೪

ಕೆತ್ತುಕೊಂಡಾ ನಾಚಿಕೆಗೆ ನೆರೆ
ಕುತ್ತಿಕೊಳಬೇಕೆಂಬ ಗಾದೆಯ
ನಿತ್ತ ಹೊದ್ದಿಸಬೇಡ ನಾವಂಜುವೆವು ಕಾಳಗಕೆ
ತೆತ್ತಿಗನು ನೀನಹಿತನಂತಿರೆ
ಮಿತ್ತುವಹರೇ ನಿನಗೆ ಬೇಡಿದ
ನಿತ್ತು ಸಲಹುವೆನೆನ್ನ ಕೊಲ್ಲದೆ ಬಿಟ್ಟು ಕಳುಹೆಂದ ೨೫

ವಳಿತವನು ವಾರುವನು ಮುಕ್ತಾ
ವಳಿಯಲಂಕಾರವನು ರಥವನು
ಲಲನೆಯರ ನಾನೀಸಿ ಕೊಡುವೆನು ರಾಜಭವನದಲಿ
ಎಲೆ ಬೃಹನ್ನಳೆ ನಮ್ಮ ಬೊಪ್ಪನು
ಸಲಹಿದಕೆ ಕೈಯೊಡನೆ ತೋರಿದೆ
ಕಲುಮನವಲಾ ನಿನ್ನದೆಂದಡೆ ಪಾರ್ಥನಿಂತೆಂದ ೨೬

ಪೊಡವಿಪತಿಗಳ ಬಸುರ ಬಂದೀ
ಯೊಡಲ ಕಕ್ಕುಲಿತೆಯನು ಕಾಳಗ
ದೆಡೆಗೆ ಮಾಡಿದರಿಲ್ಲ ಭೂತ ಭವಿಷ್ಯಮಾನದಲಿ
ನುಡಿಯಬಹುದೇ ಬಂಜೆವಾತನು
ಸುಡು ಸುಡೆಲವೋ ರಾಜಬಾಹಿರ
ನಡೆ ವರೂಥದ ಹೊರೆಗೆ ಕಾದಲು ಬೇಡ ಬಾಯೆಂದ ೨೭

ಕಾದುವೆನು ಮಾರೊಡ್ಡಿನಲಿ ನೀ
ನೈದಿಸೆನ್ನಯ ರಥವ ಮನದಲಿ
ಭೇದತನವನು ಬಿಟ್ಟು ಸಾರಥಿಯಾಗು ಸಾಕೆನಲು
ಆದಿಯಲಿ ನೀನಾವ ರಾಯರ
ಕಾದಿ ಗೆಲಿದ್ದೆ ಹುಲು ಬೃಹನ್ನಳೆ
ಯಾದ ನಿನಗೀ ಕದನ ನಾಟಕ ವಿದ್ಯವಲ್ಲೆಂದ ೨೮

ಎನ್ನವಂದಿಗ ರಾಜ ಪುತ್ರರಿ
ಗಿನ್ನು ಮೊಗಸಲು ಬಾರದಿದೆ ನೀ
ನೆನ್ನ ಸಾರಥಿ ಮಾಡಿಕೊಂಡೀ ಬಲವ ಜಯಿಸುವೆಯ
ಅನ್ಯರನು ಮನಗಾಂಬರಲ್ಲದೆ
ತನ್ನ ತಾ ಮನಗಾಂಬರೇಯಿ
ಗನ್ನಗತಕವ ನಾವು ಬಲ್ಲೆವು ಬಿಟ್ಟು ಕಳುಹೆಂದ ೨೯

ಎಲವೊ ಸಾರಥಿಯಾಗು ನಡೆ ನೀ
ಗಳಹಿದೊಡೆ ಕಟವಾಯ ಕೊಯ್ವೆನು
ಕೊಲುವೆನೀ ಪ್ರತಿಭಟ ನಿಕಾಯವ ನಿನ್ನ ಸಾಕ್ಷಿಯಲಿ
ಬಳಿಕ ನೀ ನಗು ನಡೆಯೆನುತ ರಿಪು
ಬಲ ಭಯಂಕರನುತ್ತರನ ಹೆಡ
ತಲೆಯ ಹದರಿನೊಳೌಂಕಿ ತಂದನು ರಥವನೇರಿಸಿದ ೩೦

ಖೇಡತನ ಬೇಡೆಲವೊ ರಣದೊಳ
ಗೋಡಿಸುವೆನಹಿತರನು ಹರಣವ
ಹೂಡಿಸುವೆನಂತಕನ ನಗರಿಗೆ ಥಟ್ಟನಡೆಹೊಯ್ದು
ಕೋಡದಿರು ಕೊಂಕದಿರು ಧೈರ್ಯವ
ಮಾಡಿ ಸಾರಥಿಯಾಗೆನುತ ಕಲಿ
ಮಾಡಿ ಕೊಂಡೊಯ್ದನು ಸಮೀಪದ ಶಮಿಯ ಹೊರೆಗಾಗಿ ೩೧

ಮರನನೇರಿದರೊಳಗೆ ಪಾಂಡವ
ರಿರಿಸಿ ಹೋದರು ಕೈದುಗಳ ವಿಂಗೆ
ಹರಣ ಭರಣ ಕ್ಷಮೆಗಳಲಿ ನೀನೆನಗೆ ನೀಡೆನಲು
ಅರಸು ಮಕ್ಕಳು ಮುಟ್ಟಲನುಚಿತ
ಮರದ ಮೇಲಣ ಹೆಣನಿದೇನೈ
ವರ ಬೃಹನ್ನಳೆ ಮತ್ತೆ ಕೆಲಸವ ಹೇಳು ತನಗೆಂದ ೩೨

ಹೊರಗೆ ತೊಗಲಲಿ ಬಿಗಿದು ಕೆಲ ಬಲ
ನರಿಯದಂದದಿ ಪಾಂಡು ನಂದನ
ರುರುವ ಕೈದುವ ಕಟ್ಟಿದರು ಹೇಣನಲ್ಲ ತೆಗೆಯೆನಲು
ಸೆರಗನಳವಡಿಸಿಕ್ಕಿ ಭೀತಿಯು
ತೊರೆದು ತುದಿಗೇರಿದನು ನೇಣ್ಗಳ
ಹರಿದು ಕೈದುವ ಬಿಟ್ಟು ಕಂಡಂಜಿದನು ಭಯ ಹೊಡೆಮ ೩೩

ಕಾಲ ಭುಜಗನ ನಾಲಗೆಯೊ ಶರ
ಜಾಲವೋ ಕಲ್ಪಾಂತ ವಹ್ನಿ
ಜ್ವಾಲೆಯೋ ಕೈದುಗಳೊ ಕಾಲಾಂತಕನ ದಾಡೆಗಳೊ
ತೋಳು ಧರಿಸುವವೆಂತು ನೋಡಿದ
ಡಾಲಿಯುರೆ ಬೆಂದವು ಬೃಹನ್ನಳೆ
ಕಾಳು ಮಾಡಿದೆ ಕೊಂದೆಯೆನುತೋರಂತೆ ಹಲುಬಿದನು ೩೪

ಹೊಗರ ಹೊರಳಿಯ ಹೊಳೆವ ಬಾಯ್ಧಾ
ರೆಗಳ ತಳಪದ ಕಾಂತಿ ಹೊನ್ನಾ
ಯುಗದ ಬಹಳ ಪ್ರಭೆ ಶರೌಘಾನಲನ ಗಹ ಗಹಿಸಿ
ಝುಗಝುಗಿಸೆ ಕಣ್ಮುಚ್ಚಿ ಕೈಗಳ
ಮುಗಿದು ಸಾರಥಿಗೆಂದನೆನ್ನನು
ತೆಗೆದುಕೊಳ್ಳೈ ತಂದೆ ಸಿಲುಕಿದೆನಸ್ತ್ರ ಸೀಮೆಯಲಿ ೩೫

ತಂಡುಕಬಹುದೇ ದೋಷಿ ಹಾವಿನ
ಕೊಡನ ನಿನಗಿವು ಕೈದುಗಳೆ ಬರ
ಸಿಡಿಲ ದಾವಣಿಯಾಗುತಿವೆ ಕೈಯಿಕ್ಕಲಂಜುವೆನು
ಬಿಡಿಸು ಸಾರಥಿಯೆನ್ನನೆನೆ ಫಡ
ನಡುಗದಿರು ಫಲುಗುಣನ ನೆನೆ ಕೈ
ದುಡುಕು ಕೈವಶವಹವು ತೆಗೆ ಸಾಕೆಂದನಾ ಪಾರ್ಥ ೩೬

ಉಲಿದು ಸತ್ವದೊಳೌಕಿ ಕಾಯುವ
ಬಲಿದು ತೆಕ್ಕೆಯೊಳೊತ್ತಿ ಬೆವರಿದು
ಬಳಲಿ ನೀಡಿದನರ್ಜುನನ ಕರತಳಕೆ ಗಾಂಡಿವವ
ಬಲುಹಿನಿಂದವಡೊತ್ತಿ ತೆಗೆ ತೆಗೆ
ದುಳಿದ ಬಿಲುಗಳ ನೀಡಿ ಮರನನು
ಮಲಗಿ ಢಗೆಯಿಂದಳ್ಳೆವೊಯ್ದು ಕುಮಾರನಿಂತೆಂದ ೩೭

ಗಿರಿಯನೆತ್ತಲು ಬಹುದು ಬಿಲುಗಳ
ಕೆರಳಿಚುವಡಾರೆನು ಬೃಹನ್ನಳೆ
ಧರಿಸಲಾಪೈ ನೀ ಸಮರ್ಥನು ನಿನಗೆ ಶರಣೆನುತ
ಸರಳ ಹೊದೆಗಳ ದೇವದತ್ತವ
ಪರಶು ತೋಮರ ಕುಂತವಸಿ ಮು
ದ್ಗರ ಗದಾ ದಂಡಾದಿ ಶಸ್ತ್ರವ ತೆಗೆದು ನೀಡಿದನು ೩೮

ಹೇಳು ಸಾರಥಿ ಬಿಲ್ಲಿದಾವನ
ತೋಳಿಗಳವಡುವುದು ಮಹಾ ಶರ
ಜಾಲ ಬೆಸಗೈದಪವಿದಾರಿಗೆ ಮಿಕ್ಕ ಬಿಲ್ಲುಗಳು
ಕಾಳಗದೊಳಿವನಾರು ತೆಗೆವರು
ಮೇಲುಗೈದುಗಳಾರಿಗಿವು ಕೈ
ಮೇಳವಿಸುವವು ಮನದ ಸಂಶಯ ಹಿಂಗೆ ಹೇಳೆಂದ ೩೯

ಇದು ಕಣಾ ಗಾಂಡೀವವೆಂದೆಂ
ಬುದು ಮಹಾಧನು ಪಾರ್ಥನದು ಬಳಿ
ಕಿದು ಯುಧಿಷ್ಠಿರ ಚಾಪವೀ ಧನು ಭೀಮಸೇನನದು
ಇದು ನಕುಲ ಕೋದಂಡ ಬಿಲು ತಾ
ನಿದುವೆ ಸಹದೇವನದು ಭಾರಿಯ
ಗದೆಯಿದನಿಲಜನದು ಕಿರೀಟಿಯ ಬಾಣವಿವುಯೆಂದ ೪೦

ಅವರವರ ಬತ್ತಳಿಕೆ ಚಾಪವ
ನವರ ಶರವನು ಕಂಬು ಖಡುಗವ
ಕವಚ ಸೀಸಕ ಜೋಡುಗಳ ಬಿರುದುಗಳ ಟೆಕ್ಕೆಯವ
ವಿವಿಧ ಶಸ್ತ್ರಾಸ್ತ್ರವನು ಫಲುಗುಣ
ವಿವರಿಸಲು ಬೆರಗಾಗಿ ಸಾರಥಿ
ಯಿವನು ತಾನಾರೆಂದು ಮತ್ಸ್ಯನ ಸೂನು ಬೆಸಗೊಂಡ ೪೧

ಆರು ನೀನರ್ಜುನನೊ ನಕುಲನೊ
ಮಾರುತನ ಸುತನೋ ಯುಧಿಷ್ಠಿರ
ವೀರನೋ ಸಹದೇವನೋ ಮೇಣವರ ಬಾಂಧವನೊ
ಧೀರ ಹೇಳೈ ಬೇಡಿಕೊಂಬೆನು
ಕಾರಣವ ವಿಸ್ತರಿಸು ಪಾಂಡು ಕು
ಮಾರರಾಯುಧ ತತಿಯ ನೀನೆಂತರಿವೆ ಹೇಳೆಂದ ೪೨

ಆದೊಡಾನರ್ಜುನನು ಬಾಣಸಿ
ಯಾದ ವಲಲನು ಭೀಮ ವರ ಯತಿ
ಯಾದ ಕಂಕನು ಧರ್ಮಪುತ್ರನು ನಿಮ್ಮ ಗೋಕುಲವ
ಕಾದವನು ಸಹದೇವ ರಾವುತ
ನಾದವನು ನಕುಲನು ವಿಳಾಸಿನಿ
ಯಾದವಳು ಸೈರಂಧ್ರಿ ರಾಣೀವಾಸವೆಮಗೆಂದ ೪೩

ಅಹುದು ಬಳಿಕೇನುಳಿದವರಿಗೀ
ಮಹಿಮೆ ತಾನೆಲ್ಲಿಯದು ಕಾಣಲು
ಬಹುದಲಾ ಜೀವಿಸಿದರತಿಶಯವನು ಮಹಾದೇವ
ಗಹನ ಮಾಡದೆ ನುಡಿದ ತಪ್ಪಿನ
ಬಹಳತೆಯ ಭಾವಿಸದೆ ತನ್ನನು
ಕುಹಕಿಯೆನ್ನದೆ ಕಾಯಬೇಕೆಂದೆರಗಿದನು ಪದಕೆ ೪೪

ಮೌಳಿಯನು ನೆಗಹಿದನು ನಿನ್ನಯ
ಮೇಲೆ ತಪ್ಪಿಲ್ಲೆನುತ ಫಲುಗುಣ
ಬೋಳವಿಸೆ ನಿಂದಿರ್ದು ಕೈಮುಗಿದುತ್ತರನು ನಗುತ
ಬಾಲಕನ ಬಿನ್ನಪವನೊಂದನು
ಕೇಳಬೇಹುದು ನಿಮ್ಮ ದಶ ನಾ
ಮಾಳಿಯನು ಪೇಳ್ದಲ್ಪಮತಿಯನು ತಿಳುಹಬೇಕೆಂದ ೪೫

ಎನಲು ನಸುನಗುತರ್ಜುನನು ಫಲು
ಗುಣ ಧನಂಜಯ ಜಿಷ್ಣು ಸಿತ ವಾ
ಹನ ವಿಜಯ ಬೀಭತ್ಸು ಪಾರ್ಥ ಕಿರೀಟಿ ಮೊದಲಾದ
ವಿನುತ ಕೃಷ್ಣನು ಸವ್ಯಸಾಚಿಗ
ಳೆನಿಪ ಪೆಸರನು ತಿಳುಹಿ ಪುನರಪಿ
ತನಗೆ ಬಂದಂದವನು ವಿಸ್ತರವಾಗಿ ವಿರಚಿಸಿದ ೪೬

ನಂಬಿದೆನು ಲೇಸಾಗಿ ನಿಶ್ಚಯ
ವಿಂಬುಗೊಂಡುದು ಪಾರ್ಥ ನಿನಗೀ
ಡೊಂಬಿದೇಕೈ ಹುಲುಬೃಹನ್ನಳೆತನದ ಬಹು ರೂಪು
ಅಂಬುಜಾಕ್ಷನ ಸಾಹಸ ಪ್ರತಿ
ಬಿಂಬವಲ್ಲಾ ನೀನು ನಿನ್ನ ವಿ
ಡಂಬಿಸಿದ ರೂಹಿಂಗೆ ಕಾರಣವೇನು ಹೇಳೆಂದ ೪೭

ಇದು ಕಣಾ ಧರ್ಮಜನ ಸತ್ಯಾ
ಭ್ಯುದಯಕೋಸುಗ ಊರ್ವಶಿಯ ಶಾ
ಪದಲಿ ಬಂದುದು ಹೊತ್ತು ನೂಕಿದೆನೊಂದು ವತ್ಸರವ
ಇದಕೆ ನಿಜ್ಯೋಢಾಯ್ತು ನಿರ್ವಿ
ಘ್ನದಲಿ ನೂಕಿದೆವವಧಿಯನು ತ
ನ್ನದಟುತನವನು ಭೀತಿಗೊಳ್ಳದೆ ನೋಡು ನೀನೆಂದ ೪೮

ಬಳೆಯ ನೆಗ್ಗೊತ್ತಿದನು ಕೌರವ
ಬಲದ ಗಂಟಲ ಬಳೆಯ ಮುರಿವವೊ
ಲಲಘು ಸಾಹಸಿ ಘಳಿಯನುಟ್ಟನು ಮಲ್ಲಗಂಟಿನಲಿ
ತಲೆ ನವಿರ ಹಿಣಿಲಿರಿದು ತಿಲಕವ
ಗೆಲಿದು ಕಿಗ್ಗಟ್ಟಿನ ಕಠಾರಿಯ
ಹೊಳೆವ ಗೊಂಡೆಯ ಮೆರೆಯೆ ಗಂಡಂದವನು ಕೈಕೊಂಡ ೪೯

ತೇರ ತೆಗೆದನು ತನ್ನ ಮುನ್ನಿನ
ವಾರುವಂಗಳ ಹೂಡಿದನು ಕಪಿ
ವೀರ ನೆನೆಯಲು ಬಂದು ಮಂಡಿಸಿದನು ಧ್ವಜಾಗ್ರದಲಿ
ಚಾರು ಸೀಸಕ ಜೋಡು ಕುಲಿಶದ
ಸಾರ ಕವಚವ ಬಿಗಿದು ಬೊಬ್ಬೆಯ
ಭಾರವಣೆ ಮಿಗೆ ಧನುವ ಕೊಂಡನು ತಿರುವನೇರಿಸಿದ ೫೦

ರಾಯ ಧರ್ಮಜ ಬಾಳುಗೆನುತ ನಿ
ಜಾಯುಧದ ಗುರುವಿಂಗೆರಗಿ ಸುರ
ರಾಯ ನಂದನನೊಲವಿನಲಿ ಗಾಂಡಿವವ ಜೇವಡಿಸಿ
ರಾಯ ಕುವರನ ಸೂತತನದ ವಿ
ಡಾಯಿಯರಿಯಲು ಬಹುದೆನುತ ಸಮ
ರಾಯತಾಸ್ತ್ರನು ಪಾರ್ಥ ಮೈದೋರಿದನು ಪರಬಲಕೆ ೫೧

ಸಡಿಲ ಬಿಡೆ ವಾಘೆಯನು ಚಿಮ್ಮಿದ
ವೊಡನೊಡನೆ ವೇಗಾಯ್ಲ ತೇಜಿಗ
ಳೊಡೆದುದಿಳೆಯೆನೆ ಗಜರು ಮಿಗೆ ಗರ್ಜಿಸಿದವಳ್ಳಿರಿದು
ಕುಡಿ ನೊರೆಯ ಕಟವಾಯ ಲೋಳೆಯೊ
ಳೊಡಲ ಸಂಚದ ನುಡಿಯ ಘುಡು ಘುಡು
ಘುಡಿಪ ನಾಸಾಪುಟದ ಹುಂಕೃತಿ ಮಸಗೆ ಮುಂಚಿದವು ೫೨

ಆರು ಕೌರವನಲ್ಲಿ ಭೀಷ್ಮನ
ದಾರು ಕೃಪನಾವವನು ದ್ರೋಣನ
ದಾರು ಬಲದೊಳಗಾವನಶ್ವತ್ಥಾಮನೆಂಬವನು
ವೀರ ತಿಳುಹೆನಗಿಲ್ಲಿ ಕರ್ಣನ
ದಾರು ನಾ ಕಂಡರಿಯೆನೆನಲಾ
ವೈರಿದಲ್ಲಣ ಪಾರ್ಥ ನಗುತುತ್ತರನೊಳಿಂತೆಂದ ೫೩

ಉದಯುದರುಣನ ಕರುವ ಹಿಡಿದಂ
ದದಲಿ ವರ್ಣಚ್ಛವಿಯುಲೊಪ್ಪುವ
ಕುದುರೆಗಳ ತಳತಳಿಸಿ ಬೆಳಗುವ ಕೊಡನ ಹಳವಿಗೆಯ
ಗದಗದಿಪ ಮಣಿಮಯದ ತೇರಿನ
ಕದನ ಕೋಳಾಹಳನು ಗರುಡಿಯ
ಸದನ ಸರ್ವಜ್ಞನನು ನೋಡೈ ದ್ರೋಣನವನೆಂದ ೫೪

ನವರತುನ ಕೇವಣದ ರಥವತಿ
ಜವದ ತೇಜಿಯ ತೆಕ್ಕೆಗಳ ರೌ
ರವದ ರೌದ್ರಾಯುಧದ ಗಡಣದ ಹರಿಯ ಹಳವಿಗೆಯ
ಬವರ ಭೈರವನಾತನತಿ ಬಲ
ಶಿವನ ನೊಸಲಂದದಲಿ ಮೆರೆವವ
ನಿವನು ಜಿತಸಂಗ್ರಾಮನಶ್ವತ್ಥಾಮ ನೋಡೆಂದ ೫೫

ಖುರದಲವನಿಯ ಹೊಯ್ದು ಲಹರಿಯ
ಲುರಿ ಮಸಗಲುಬ್ಬೆದ್ದ ತೇಜಿಯ
ಮೆರೆವ ಮುಕ್ತಾವಳಿಯ ತೇರಿನ ನವ ವಿಳಾಸದಲಿ
ಸರಳ ತಿರುಹುತ ನಿಂದು ಧನುವನು
ನಿರುತವನು ನೆರೆ ನೋಡಿ ತಾ ಝೇಂ
ಕರಿಸುವವನತಿ ಬಲ ಕೃಪಾಚಾರಿಯನು ನೋಡೆಂದ ೫೬

ಲಲಿತ ರತ್ನಪ್ರಭೆಯ ತೇರಿನ
ಲುಲಿವ ಬಹುವಿಧ ವಾದ್ಯ ರಭಸದ
ಕಳಕಳದ ಕಡು ದರ್ಪದಿಂದಳ್ಳಿರಿವ ತೇಜಿಗಳ
ಲಳಿಯ ಲಹರಿಯ ಲಗ್ಗೆಗಳ ಮೋ
ಹಳಿಸಿ ಬಿಲು ಝೇಂಕಾರ ರವದಿಂ
ದುಲಿವವನು ಕಲಿಕರ್ಣನತುಳ ಪರಾಕ್ರಮಾನಲನು ೫೭

ಅತ್ತಲೈದನೆ ಬಹಳ ಬಲದೊ
ತ್ತೊತ್ತೆಯಲಿ ನಮ್ಮುಭಯ ರಾಯರ
ಮುತ್ತಯನು ತಾನೆನಿಸಿ ಹೂಡಿದ ಬಿಳಿಯ ತೇಜಿಗಳ
ತೆತ್ತಿಸಿದ ಹೊಂದಾಳ ಸಿಂಧದ
ಸತ್ತಿಗೆಯ ಸಾಲಿನಲಿ ರಿಪುಕುಲ
ಮೃತ್ಯುವಾತನು ವೀರ ಗಂಗಾಸುತನು ನೋಡೆಂದ ೫೮

ಅಗಿವ ಹಾವಿನ ಹಳವಿಗೆಯ ಮಿಗೆ
ನೆಗಹಿ ಮುಸುಕಿದ ಝಲ್ಲರಿಯ ಜೋ
ಡಿಗಳ ತುಡುಕುವ ತಂಬಟಂಗಳ ಮೊರೆವ ಚಂಬಕದ
ನೆಗಹಿ ನಿಗುರುವ ಟೆಕ್ಕೆಯುದ ಮದ
ವೊಗುವ ಕರಿಗಳ ಮಧ್ಯದಲಿ ತಾ
ನಗಡು ದುರಿಯೋಧನನು ಜೂಜಿನ ಜಾಣನವನೆಂದ ೫೯

ಅವನ ಬಲವಂಕದಲಿ ನಿಂದವ
ನವನು ಭೂರಿಶ್ರವನು ಮತ್ತಾ
ಭುವನಪತಿಯೆಡವಂಕದಲಿ ನಿಂದವ ಜಯದ್ರಥನು
ತವತವಗೆ ಬಲುಗೈಗಳೆನಿಸುವ
ಶಿವನ ನೊಸಲಂದದಲಿ ಮೆರೆವವ
ರವನಿಪಾಲಕನನುಜರನು ನೋಡೆಂದನಾ ಪಾರ್ಥ ೬೦

ಹೊಗಳಲನುಪಮ ಸೈನ್ಯವಿಂತೀ
ದ್ವಿಗುಣವಂಧಾಸುರನ ಸೇನೆಗೆ
ತ್ರಿಗುಣವಿದು ರಾವಣನ ಮೋಹರಕೆನುತ ಫಲುಗುಣನು
ಹಗೆಯ ಭುಜದಗ್ಗಳಿಕೆಯನು ನಾ
ಲಗೆ ದಣಿಯೆ ಕೈವಾರಿಸುತ ಮಿಗೆ
ನಿಗುಚಿದನು ಫಲುಗುಣನು ಗಾಂಡಿವವ ಝೇವಡೆದು ೬೧

ಖುರಪುಟದಲಾಕಾಶ ಭಿತ್ತಿಯ
ಬರೆವವೋಲ್ ಸೂರಿಯನ ತುರಗವ
ಕರೆವವೋಲ್ ಕೈಗಟ್ಟಿ ದುವ್ವಾಳಿಸುವಡಾಹವಕೆ
ಅರರೆ ಪೂತುರೆ ಹಯವೆನುತ ಚ
ಪ್ಪರಿಸಲೊಡೆ ನಿಗುರಿದವು ಕೆಂದೂ
ಳಿರದೆ ನಭಕುಪ್ಪರಿಸಿ ರವಿ ಮಂಡಲವನಂಡಲೆಯೆ ೬೨

ತುರಗ ಗರ್ಜನೆ ರಥದ ಚೀತ್ಕೃತಿ
ವರ ಧನುಷ್ಟಂಕಾರ ಕಪಿಯ
ಬ್ಬರಣೆ ಪಾರ್ಥನ ಬೊಬ್ಬೆ ನಿಷ್ಠುರ ದೇವದತ್ತ ರವ
ಅರರೆ ಹೊದರೆದ್ದವು ಗಿರಿವ್ರಜ
ಬಿರಿಯೆ ಜಲನಿಧಿ ಜರಿಯೆ ತಾರಕಿ
ಸುರಿಯೆ ಸುರಕುಲ ಪರಿಯೆ ಭೀತಿಯಲಹಿತ ಬಲ ಹರಿಯೆ ೬೩

ಶಿರವ ಸಿಡಿಲೆರಗಿದವೊಲುತ್ತರ
ತಿರುಗಿ ಬಿದ್ದನು ಮೂರ್ಛೆಯಲಿ ಹೊಡೆ
ಮರಳಿದವು ಕಣ್ಣಾಲಿ ಕಾರಿದವರುಣ ವಾರಿಗಳ
ಹೊರಳುತಿರಲೆಲೆ ಪಾಪಿ ಸೈರಿಸ
ಲರಿಯನಿನ್ನೇನೆನುತ ಫಲುಗುಣ
ಸೆರಗಿನಲಿ ಬೀಸಿದನು ಕುಳ್ಳಿರಿಸಿದನು ರಥದೊಳಗೆ ೬೪

ಏನು ಮತ್ಸ್ಯಕುಮಾರ ಭವಣೆಯಿ
ದೇನು ನಿನಗೆಂದೆನಲು ಜಗದವ
ಸಾನದಂದದಿ ಸಿಡಿಲು ಸುಳಿದುದು ಬಿರಿದುದೆನ್ನೊಡಲು
ಆನಲಾಪೆನೆ ನಿನ್ನ ಬಹಳ
ಧ್ವಾನವನು ಸಾಕೆನ್ನ ಕಳುಹು ಮ
ಹಾ ನಿಧಾನವ ಮಾಣು ಮಾಣೆನೆ ಪಾರ್ಥನಿಂತೆಂದ ೬೫

ಖೇಡನಾಗದಿರದುಭುತ ಧ್ವನಿ
ಮಾಡೆನಂಜದಿರಂಜದಿರು ಧೃತಿ
ಮಾಡಿಕೊಂಡೀ ರಥವ ಜೋಡಿಸೆನುತ್ತ ಸಂತೈಸಿ
ಮೂಡಿಗೆಯ ಅಂಬುಗಿದು ತಿರುವಿಗೆ
ಹೂಡಿದನು ಫಲುಗುಣನ ಕದನವ
ನೋಡಲಮರಶ್ರೇಣಿ ಮೇಳೈಸಿತ್ತು ಗಗನದಲಿ ೬೬

ಏಳನೆಯ ಸಂಧಿ

ಸೂ. ಕದನ ಚೌಪಟಮಲ್ಲ ಪರ ಬಲ
ಮದನ ಮದಹರ ರುದ್ರನಹಿತರ
ಸದೆದು ಮರಳಿಚಿದನು ವಿರಾಟನ ನಿಖಿಳ ಗೋಕುಲವ

ಭಯವು ಭಾರವಿಸಿತ್ತು ಜನಮೇ
ಜಯ ಮಹೀಪತಿ ಕೇಳು ಕುರುಸೇ
ನೆಯಲಿ ಭೀಷ್ಮ ದ್ರೋಣರರಿದರು ಪಾರ್ಥನೆಂಬುದನು
ಜಯವು ಜೋಡಿಸಲರಿಯದಿದು ಸಂ
ಶಯದ ಸುಳಿವುತ್ಪಾತ ಶತವಿದು
ಲಯದ ಬೀಜವು ಭೀಷ್ಮ ಚಿತ್ತವಿಸೆಂದನಾ ದ್ರೋಣ ೧

ಸುರಿಸುತಿವೆ ಕಂಬನಿಗಳನು ಗಜ
ತುರಗಚಯವೊರೆಯುಗಿದಡಾಯುಧ
ಮುರಿದು ಬಿದ್ದುದು ಬೀಸುತಿದೆ ಬಿರುಗಾಳಿ ಬಲ ಬೆದರೆ
ಹರಿವುತಿವೆ ತಾರಕಿಗಳಭ್ರದೊ
ಳರುಣಮಯ ಜಲ ಧಾರೆಯಿದೆ ತರ
ತರದಲಿದೆ ಪಡಿಸೂರ್ಯಮಂಡಲವೆಂದನಾ ದ್ರೋಣ ೨

ಇದೆ ಬಹಳ ಭೂಕಂಪವದುಭುತ
ವಿದೆ ದಿಶಾವಳಿ ಧೂಮಕೇತುಗ
ಳಿದೆ ಪತಾಕಾಭಂಗವಿದೆ ವಿಪರೀತ ಪರಿವೇಷ
ಇದು ಸಮಾಹಿತವಲ್ಲ ರಾಜಾ
ಭ್ಯುದಯಕರವೇ ಭೀಷ್ಮ ನಮ್ಮನು
ಸದೆಯದಿಹನೇ ಸುರಪನಂದನನೆಂದನಾ ದ್ರೋಣ ೩

ಬಿರಿಯಲಬುಜಭವಾಂಡವಿದೆ ಕಪಿ
ವರನ ಕಳಕಳ ದೇವದತ್ತದ
ಧರಧುರದ ದೆಖ್ಖಾಳವಿದೆ ಗಾಂಡಿವದ ಬೊಬ್ಬೆಯಿದೆ
ನರನ ನಿಷ್ಠುರ ಸಿಂಹ ರವವಿದೆ
ತುರಗ ದಳ್ಳುರಿ ಸಾರುತಿದೆ ಸಂ
ಗರಕೆ ಸಾಹಸ ಮಲ್ಲ ಮೊಳಗಿದನೆಂದನಾ ದ್ರೋಣ ೪

ಬಲವ ಬೆದರಿಸಿ ಹಗೆಯ ಭುಜದ
ಗ್ಗಳಿಕೆಯನೆ ಕೊಂಡಾಡಿ ಸಾಮಿಯ
ನಿಳಿಕೆಗಾಬಿರಿ ನಿಮ್ಮ ಪೈಕಕೆ ಖುಲ್ಲತನ ಸಹಜ
ಫಲುಗುಣನೆಯಾಗಲಿ ಸುರೇಂದ್ರನೆ
ನಿಲಲಿ ಭಾರ್ಗವ ರಾಮನಾಗಲಿ
ಗೆಲಿದು ಕೊಡುವೆನು ನಿಮಿಷಕೆಂದನು ಖಾತಿಯಲಿ ಕರ್ಣ ೫

ನರನು ನರನೆಂದನವರತ ತಲೆ
ಬಿರಿಯೆ ಹೊಗಳುವಿರಾನಿರಲು ಸಂ
ಗರಕೆ ತಲೆದೋರಿದೊಡೆ ತರಿವೆನು ಲೋಕಪಾಲಕರ
ನರನ ತೆತ್ತಿಗರಹಿರಿ ತತ್ಪುರೆ
ಪುರದೊಳಗೆ ಕೌರವನವರು ದು
ಶ್ಚರಿತರೆರಡಿಟ್ಟಹಿರಿ ಖೂಳರು ನಿಮ್ಮೊಳೇನೆಂದ ೬

ಹೊಕ್ಕು ತಾ ಬಳಿಸಲಿಸಿದೊಡೆ ಹಿಂ
ದಿಕ್ಕಿ ಕೊಂಬವರಾರು ಹಗೆವನ
ಸಿಕ್ಕಿದುರಗವ ಸೆಳೆವನಾವನು ಗರುಡ ತುಂಡದಲಿ
ಏಕ್ಕತುಳದಲಿ ವೈರಿ ಪಾರ್ಥನ
ನೊಕ್ಕಲಿಕ್ಕುವೆನರಸ ನಿನ್ನೀ
ಚುಕ್ಕಿಗಳ ಚಾಪಲವ ಕೇಳದಿರೆಂದನಾ ಕರ್ಣ ೭

ಎನಲು ಭುಗಿಲೆಂದನು ಕೃಪಾಚಾ
ರ್ಯನು ಸುಯೋಧನ ಕೇಳು ರಾಧಾ
ತನಯನಿವ ಬೊಗುಳಿದೊಡೆ ನಿಶ್ಚಯವೆಂದು ನಂಬದಿರು
ಅನುವರದೊಳರ್ಜುನನ ಗೆಲುವೊಡೆ
ಯೆನಗೆ ನಿನಗೀತಂಗೆ ಕೆಲಬರಿ
ಗನಿಮಿಷರಿಗಳವಲ್ಲ ಬಲ್ಲೈ ಪಾರ್ಥನಧಟುಗಳ ೮

ಮಾಡಿದನು ಹರನೊಡನೆ ಖಾಡಾ
ಖಾಡಿಯನು ಸುರಪತಿಯ ತೋಟವ
ಬೇಡಿದೊಡೆ ಬೇಳಿದನು ವಹ್ನಿಗೆ ರಾಜಸೂಯದಲಿ
ರೂಢಿಗುತ್ತರ ಕುರುಗಳರ್ಥವ
ಹೂಡಿಸಿದನರಮನೆಗೆ ದೈತ್ಯರ
ಬೀಡ ಬರಿಗೈದನು ಹಿರಣ್ಯಕಪುರ ನಿವಾಸಿಗಳ ೯

ಬಾಗಿಸಿದ ಬಿಲ್ಲಿನಲಿ ರಾಯರ
ಮೂಗ ಕೊಯ್ದನು ಮದುವೆಯಲಿ ನೀ
ನೀಗಳೊದರುವೆ ಕೌರವೇಂದ್ರನನಂದು ಬಿಡಿಸಿದೆಲ
ಆ ಗರುವ ಸೈಂಧವನ ಮುಡಿಯ ವಿ
ಭಾಗಿಸಿದ ಭಟನಾರು ಪಾರ್ಥನ
ಲಾಗುವೇಗವನಾರು ಬಲ್ಲರು ಕರ್ಣ ಕೇಳೆಂದ ೧೦

ಮರುಳ ಕಣ್ಣಿಗೆ ಕೊಡನ ತೋರದ
ಲಿರದೆ ಸಾಸವೆ ನಿಮ್ಮ ಕಣ್ಣಿಗೆ
ನರನು ದೊಡ್ಡಿತು ಉಳಿದ ವೀರರ ಕಣ್ಗೆ ತುಸು ಮಾತ್ರ
ಮರುಳು ಹಾರುವ ಗದ್ಯಪದ್ಯದ
ಸರಸ ವಿದ್ಯಗಳಲ್ಲದೀ ಸಂ
ಗರದ ಕರ್ಕಶ ವಿದ್ಯೆ ನಿಮಗೇಕೆಂದನಾ ಕರ್ಣ ೧೧

ಹಣೆಗೆ ಮಟ್ಟಿಯು ಬಡಿದು ದರ್ಭೆಯ
ಹಣಿದು ಬೆರಳಲಿ ಸೆಕ್ಕಿ ಧೋತ್ರದ
ದಣಿಬವನು ನಿರಿವಿಡಿದು ಮಹಳದ ಮನೆಯ ಚೌಕದಲಿ
ಮಣೆಗೆ ಮಂಡಿಸಿ ಕುಳ್ಳಿತುಂಬೌ
ತಣದ ವಿದ್ಯವ ಬಲ್ಲಿರಲ್ಲದೆ
ರಣ ವಿಚಾರದ ವಿದ್ಯೆ ನಿಮಗೇಕೆಂದನಾ ಕರ್ಣ ೧೨

ಇಂದು ಪಿತೃದಿನವಿಂದು ಸಂಕ್ರಮ
ಣೆಂದು ಸೂರ್ಯಗ್ರಹಣ ಹರಿದಿನ
ವಿಂದು ಯಜ್ಞಾರಂಭ ದಿನ ವರ್ಧಂತಿ ಲೇಸೆಂದು
ಬಂದು ನಾನಾ ಮುಖದ ದಾನಕೆ
ತಂದ ವಸ್ತುವ ಬಾಚಿ ಹೊಳ್ಳಿಸಿ
ತಿಂದು ಕೊಬ್ಬಿದ ನಿಮಗೆ ಸುಭಟರ ಮಾತದೇಕೆಂದ ೧೩

ಬಲ್ಲಿರೈ ಕೌರವನ ಧನವನು
ಹೊಳ್ಳಿಸಲು ಮೃಷ್ಟಾನ್ನದಿಂದವೆ
ಡೊಳ್ಳ ಬೆಳಸಿಯೆ ರಾಜಗುರುತನದಿಂದ ಬೆರತಿಹಿರಿ
ಬಿಲ್ಲ ವಿದ್ಯಾವಿಷಯ ರಿಪುಭಟ
ಮಲ್ಲರೊಡನೆಯು ಕದನವಿದು ಜಡ
ರೆಲ್ಲರಿಗೆ ಸುಲಭವೆ ಜಪಾನುಷ್ಠಾನವಲ್ಲೆಂದ ೧೪

ಕೇಳಿದಶ್ವತ್ಥಾಮ ಕಿಡಿಗಳ
ನಾಲಿಗಳಲುಗುಳಿದನು ಕೇಳೆಲೆ
ಖೂಳ ಸೂತನ ಮಗನೆ ಸುಭಟಾಂಗದಲಿ ಖರೆಯುನಲ
ಕೀಳು ಜಾತಿಗೆ ತಕ್ಕ ನುಡಿಗಳು
ಮೇಳವಿಸಿದವು ಕುಲವ ನಾಲಗೆ
ಹೇಳಿತೆಂಬುದು ತಪ್ಪದಾಯಿತು ಕರ್ಣ ಕೇಳೆಂದ ೧೫

ನಗುವೆ ವಿಪ್ರರನಾವ ರಾಯರ
ಮಗನು ಹೇಳಾ ದಾನ ಧರ್ಮಾ
ದಿಗಳೊಳರ್ಥವನಾರು ಕೊಂಬರು ದ್ವಿಜರು ಹೊರಗಾಗಿ
ಜಗವ ರಕ್ಷಿಸಲಾವು ಕೊಂಬೆವು
ಮಗುಳೆ ಕೊಡುವೆವು ಕ್ಷತ್ರ ವೈಶ್ಯಾ
ದಿಗಳು ಕೊಡುವರು ತತ್ಪ್ರತಿಗ್ರಹ ಯೋಗ್ಯವಲ್ಲೆಂದ ೧೬

ಉಳಿದ ವರ್ಣತ್ರಯಕೆ ಬೆಸಕೈ
ವಳತೆಯಲಿ ಶೂದ್ರನು ಕೃತಾರ್ಥನು
ತಿಳಿಯೆ ನೀನಾರಿದರೊಳಗೆ ಕೊಂಬುವನೊ ಕೊಡುವವನೊ
ಕುಲವಿಹೀನನ ತಂದು ಕೌರವ
ತಿಕಲ ಪತಿಕರಿಸಿದೊಡೆ ನಾಲಗೆ
ಯುಲಿಯಲಾಯಿತು ಕರ್ಣ ನಿನ್ನಯ ಭವವ ನೆನೆಯೆಂದ ೧೭

ಪರರು ಪತಿಕರಿಸಿದೊಡೆ ಲಜ್ಜೆಗೆ
ಶಿರವ ನಸುಬಾಗುವರು ಗರುವರು
ದುರುಳ ನೀ ದುರುದುಂಬಿತನದಲಿ ನಿನ್ನ ಹೊಗಳಿದೊಡೆ
ಗರುವ ಮಾನ್ಯರು ಮೆಚ್ಚುವರೆ ಸಸಿ
ನಿರು ಮಹಾತ್ಮರು ನಿನ್ನೊಡನೆ ಉ
ತ್ತರವ ಕೊಡುವರೆ ಗಳಹತನ ನಮ್ಮೊಡನೆ ಬೇಡೆಂದ ೧೮

ತೆಗೆದು ತಾಳಿಗೆಗಡಿತನಕ ನಾಲ
ಲಗೆಯ ಕೀಳ್ವೆನು ಮುನಿದು ತನ್ನೋ
ಲಗವ ತೆಗೆಸಲಿ ಕೌರವನು ನಿನಗೊಲಿದು ಪತಿಕರಿಸಿ
ಅಗಣಿತದ ಗರುವರನು ನಿಂದಿಸಿ
ನಗುವೆ ನಿನ್ನನು ಕೊಲುವೆನೆಂದಾ
ಳುಗಳ ದೇವನು ಸೆಳೆದನಶ್ವತ್ಥಾಮ ಖಂಡೆಯವ ೧೯

ಆಳು ಮತ್ಸರದಧಿಕ ರೋಷದ
ಮೇಲುನುಡಿಯಂಕುರಿಸೆ ಕುರು ಭೂ
ಪಾಲನಿಬ್ಬರ ತೆಗೆದನುಚಿತೋಕ್ತಿಯಲಿ ಸಂತೈಸಿ
ಕಾಳಗಕೆ ತನ್ನವನೊಡನೆ ನಿ
ಮ್ಮಾಳುತನವನು ತೋರಿಯೊಳಗೊಳ
ಗಾಳು ವಾಸಿಯ ತೋಟಿ ಬೇಡೆಂದರಸ ಮಾಣಿಸಿದ ೨೦

ಬಂದು ಭೀಷ್ಮಂಗೆರಗಿ ಕೈ ಮುಗಿ
ದೆಂದನೀತನು ಪಾರ್ಥನಾದೊಡೆ
ಹಿಂದಣಂತಿರೆ ನವೆಯಬೇಹುದು ವರುಷ ಹದಿಮೂರ
ಸಂದುದಿಲ್ಲಜ್ಞಾತ ವಾಸಕೆ
ಮುಂದೆ ದಿನವುಂಟೆನ್ನ ಲೆಕ್ಕ
ಕ್ಕೆಂದು ಕುರುಪತಿ ನುಡಿಯೆ ನಗುತಿಂತೆಂದನಾ ಭೀಷ್ಮ ೨೧

ಮಗನೆ ಕೇಳೀರೈದು ವರುಷಕೆ
ಮಿಗುವವೆರಡೇ ಮಾಸ ಮಾಸಾ
ದಿಗಳನವರನುಭವಿಸಿದರು ಹದಿಮೂರು ವತ್ಸರವ
ಮಿಗುವವಧಿ ಬಂಧರರಿಯೆ ನಿನ್ನಿನ
ಹಗಲು ನಿನ್ನದು ಪಾಂಡುತನಯರು
ಹೊಗುವಡಿಂದಿನ ದಿವಸವವರದು ಕಂದ ಕೇಳೆಂದ ೨೨

ಜಲಧಿ ಮೇರೆಯನೊದೆದು ಹಾಯಲಿ
ನೆಲನನಿಳುಹಲಿ ದಿಗಿಭವಿನಮಂ
ಡಲಕೆ ಕಾಳಿಕೆಯಿಡಲಿ ನಡೆದಾಡಲಿ ಕುಲಾದ್ರಿಗಳು
ಅಳುಪಲರಿವನೆ ಸತ್ಯಭಾಷೆಗೆ
ಕಲಿ ಯುಧಿಷ್ಠಿರ ನೃಪತಿಯನ್ವಯ
ತಿಲಕನಲ್ಲಾ ಕಂದ ಕೌರವಯೆಂದನಾ ಭೀಷ್ಮ ೨೩

ಸಾಕದಂತಿರಲಿನ್ನು ಕಾಳಗ
ನೂಕಲರಿಯದು ಪಾರ್ಥ ಕೊಲುವೊಡೆ
ಬೇಕು ಬೇಡೆಂಬವರ ಕಾಣೆನು ಹಲವು ಮಾತೇನು
ಆ ಕುಮಾರರ ಕರೆಸಿ ಸಂಧಿಯ
ನಾಕೆವಾಳರ ಮುಂದೆ ಮಾಡಲು
ಲೋಕದಲಿ ನಿನಗಿಲ್ಲ ಸರಿ ಕುರುರಾಯ ಕೇಳೆಂದ ೨೪

ಕಂಡುದಳವಿ ವಿರೋಧಿಗೆಮಗೆಯು
ಕೊಂಡುದೇ ಬಲುಗೈದು ಮನ ಮುಂ
ಕೊಂಡು ಹೊಕ್ಕುದು ಕಳನದಲ್ಲದೆ ಪಾಂಡುಸುತರೊಡನೆ
ಉಂಡು ಮೇಣುಂಟ್ಟೊಲಿದು ಬದುಕುವ
ಭಂಡತನವೆನಗಿಲ್ಲ ವೈರವ
ಕೊಂಡೆಸಗಬೇಕೆಂದು ಬಿನ್ನವಿಸಿದನು ಕುರುರಾಯ ೨೫

ಮೇಲೆ ನೆಗಳುವ ಹದನನಿಲ್ಲಿಂ
ಮೇಲೆ ನೀನೇ ಬಲ್ಲೆಯೆನುತ ವಿ
ಶಾಲಮತಿ ಬಿಸುಸುಯ್ದು ಕೌರವ ಕೆಟ್ಟನಕಟೆನುತ
ಕಾಳಗವ ನಾವಾನುವೆವು ಪಶು
ಜಾಲ ಸಹಿತಿಭಪುರಿಗೆ ನೀ ಕಿರಿ
ದಾಳೊಡನೆ ನಡೆಯೆಂದು ಸೇನೆಯನೆರಡ ಮಾಡಿಸಿದ ೨೬

ಕೌರವೇಂದ್ರನ ಕೂಡೆ ಸೇನಾ
ಭಾರವನು ಪರುಠವಿಸಿ ಕಳುಹಿದ
ನಾರುಭಟೆಯಲಿ ಭೀಷ್ಮ ನಿಂದನು ಥಟ್ಟ ಮೇಳೈಸಿ
ವೀರ ಕರ್ಣ ದ್ರೋಣ ಗೌತಮ
ಭೂರಿಬಲ ಗುರುಸೂನು ಶಕುನಿ ಮ
ಹಾರಥಾದಿಯ ಕೂಡಿಕೊಂಡನು ನರನ ಸಂಗರಕೆ ೨೭

ಇತ್ತಲಖಿಳ ಮಹಾರಥಾದಿಯ
ನೊತ್ತಲಿಕ್ಕಿ ಸುಯೋಧನನು ಪುರ
ದತ್ತ ಗೋಕುಲ ಸಹಿತ ಹಾಯ್ದನು ಪೂತು ಮಝರೆನುತ
ಮುತ್ತಯನು ಮಾಡಿದ ನಿಯೋಗದ
ತತ್ತ್ವವಣೆ ಲೇಸಾಯ್ತು ಬೇಗದೊ
ಳುತ್ತರನೆ ಕೊಳ್ಳಿಡದ ವಾಘೆಯನೆಂದನಾ ಪಾರ್ಥ ೨೮

ತುರುಗಳನು ಮರಳಿಚುವದಿದು ನಮ
ಗುರುವ ಕಾರ್ಯವು ಮಿಕ್ಕ ಕೆಲಸದ
ಹೊರಿಗೆಯನು ನಿರ್ಣೈಸಿ ಬಳಿಕಿನಲಿವರ ಸಾಹಸವ
ಅರಿದುಕೊಂಬೆನು ಕೊಳ್ಳ ವಾಘೆಯ
ನಿರಿತದೆಡೆಯಲಿ ಭೀತಿಗೊಳ್ಳದೆ
ತರಿದು ತಿರುಗುವ ಲಾಗು ವೇಗವ ನೋಡು ನೀನೆಂದ ೨೯

ಎನಲು ಚಪ್ಪರಿಸಿದನು ತೇಜಿಗ
ಳನಿಲ ಜವದಲಿ ನಿಗುರಿದವು ಮುಂ
ಮೊನೆಯುವರ ಮನ್ನಿಸದೆ ಬೆಂಬತ್ತಿದನು ಕೌರವನ
ಜನಪ ಬಿಡು ಬಿಡು ತುರುಗಳನು ಫಲು
ಗುಣ ಕಣಾ ಬಂದವನು ಕುರುಕುಲ
ವನ ದವಾನಳನರಿಯೆನುತಲುತ್ತರನು ಬೊಬ್ಬಿರಿದ ೩೦

ಎಲೆಲೆ ನರ ಜಾರಿದನು ರಾಯನ
ಬಳಿಯ ಹತ್ತಿದನಡ್ಡ ಹಾಯ್ದತಿ
ಬಲನ ತೆಗೆ ನಮ್ಮತ್ತಲೆನುತಾ ದ್ರೋಣ ಗೌತಮರು
ಹಿಳುಕ ಕೆನ್ನೆಗೆ ಸೇದಿ ಬೊಬ್ಬೆಯ
ಕಳಕಳದಿಯಡಗಟ್ಟಿದರು ನಿ
ಲ್ಲೆಲವೊ ಫಲುಗುಣ ಕಾದಿ ನೀನೊಟ್ಟೈಸಿ ಹೋಗೆನುತ ೩೧

ನಗುತ ಫಲುಗುಣನೆರಡೆರಡು ಕೋ
ಲುಗಳನವರಂಘ್ರಿಗೆಚ್ಚನು
ತೆಗೆದು ಹಾಯ್ದನು ಮುಂದೆ ಕೌರವ ರಾಯ ಮೋಹರಕೆ
ಹೊಗರೊಗುವ ಹೊಸ ಕಣೆಯ ದಡ್ಡಿಯು
ಬಿಗಿದನೆಡಬಲನಿದಿರಿನಲಿ ಸೆಗ
ಳಿಗೆಯ ಸಸಿಯಂತಾಯ್ತು ಕೌರವ ಸೇನೆ ನಿಮಿಷದಲಿ ೩೨

ಬಿರಿದವಾನೆಗಳರ್ಜುನನ ಬಿಲು
ದಿರುವಿನಬ್ಬರಕತಿರಥರ ಬಾ
ಯ್ದೆರಳೆ ಹಾಯ್ದವು ವೀರ ಹನುಮನ ಗಾಢ ಗರ್ಜನೆಗೆ
ಶಿರವೊಡೆದು ಸಿಡಿಯಿತು ಕಿರೀಟಿಯ
ಪರಮ ಶಂಖ ಧ್ವನಿಗೆ ಕುರುಬಲ
ಹೊರಳಿಯೊಡೆದುದು ಹಾರಿ ಜದ್ದುದು ಹೆದರಿ ಹಮ್ಮೈಸಿ ೩೩

ಎಲೆಲೆ ನರನೋ ಸುಭಟ ಜೀವನ
ದಳವುಳಿಗನೋ ದಿಟ್ಟ ರಾಯರ
ದಳದ ದಾವಾನಲನೊ ಪಾರ್ಥನೊ ಕಾಲಭೈರವನೊ
ಗೆಲುವರಾವೆಡೆ ಕರ್ಣ ನೃಪ ಸೌ
ಬಲ ಜಯದ್ರಥರೆಂಬವರ ಹೆಡ
ತಲೆಗೆ ನಾಲಗೆ ಹೋಯಿತೆಂದುದು ಕೂಡೆ ಕುರುಸೇನೆ ೩೪

ಮರಳಿ ಹೊಡೆ ಹಿಂಡಾಕಳನು ಗೋ
ವರನು ಬಿಡು ಹೆಡಗೈಯ ಕೊಯ್ ನ
ಮ್ಮರಸ ನಯದಪ್ಪಿದನು ತುರು ಸೆರೆವಿಡಿವರೇ ನೃಪರು
ಕೊರಳ ಕಡಿತಕೆ ಹೊತ್ತ ಹಗೆವನ
ಸರಳಿಗಸುಗಳ ತೆರೆದಿರೆಂದ
ಬ್ಬರಿಸಿ ಕುರುಬಲ ಬಾಯಬಿಟ್ಟುದು ರಾಯರಿದಿರಿನಲಿ ೩೫

ಬೊಬ್ಬಿರಿದು ನರನೆಸಲು ಕಣೆಗಳು
ಹಬ್ಬಿದವು ಹುರಿಗೊಂಡು ಹೂಣಿಗ
ರೊಬ್ಬುಳಿಯ ಹರೆಗಡಿದು ಕರಿಗಳ ಹೊದರ ಮೆದೆಗೆಡಹಿ
ತೆಬ್ಬನೊದೆದುರೆ ಬಳಿಕ ಗರಿ ಮೊರೆ
ದಬ್ಬರಿಸಿ ಕಬ್ಬಕ್ಕಿ ಗಗನವ
ಹಬ್ಬಿದಂತಿರೆ ಮುಸಗಿದವು ಫಲುಗುಣನ ಶರಜಾಲ ೩೬

ತುಡುಕಿ ಖಂಡವ ಕಟ್ಟಿ ಹಾರುವ
ಗಿಡಗನಂತಿರೆ ಭಟರ ಗಂಟಲ
ಕಡಿದು ಹಾಯ್ದಂಬುಗಳು ಬಳಿಯಲಿ ಕೊಂದ ತಲೆಗಳಲಿ
ಅಡಸಿದವು ನಿರಿನಿಟಿಲುಗರೆದೆಲು
ವೊಡೆಯೆ ಥಟ್ಟುಗಿದಾನೆಗಳ ನಡೆ
ಗೆಡಹಿದವು ಗರಿ ಸಹಿತ ಹಾಯ್ದವು ಹಯದ ಹೊಟ್ಟೆಯಲಿ ೩೭

ಕರುಳ ಬಾಯಲಿ ಕಾರಿ ಕಾಲಾ
ಳೊರಳಿ ಕೆಡೆದುದು ಬೋಳೆಯಂಬುಗ
ಳರಿಯೆ ಸಮ ಸೀಳಾಗಿ ಬಿದ್ದವು ಗಜದ ಹೋಳುಗಳು
ಕೊರಳು ಹರಿದೊರೆವೆದ್ದ ರಕುತದ
ಹೊರಳಿಗಳ ಹೊನಲಿನಲಿ ಮುಳುಗಿತು
ತುರಗ ರಥದಳರಾಜಿ ಹೊಸ ಕುಮ್ಮರಿಯ ಹೋಲಿಸಿತು ೩೮

ಹರಿಗೆ ಖಂಡಿಸಿ ಜೋಡು ಸೀಸಕ
ಜರಿದು ಬಲುದೋಳುಡಿದು ಗೋಣರೆ
ಹರಿದು ನಿಟ್ಟೆಲು ಮುರಿದು ತೊಡೆಯುರೆಗಡಿದು ತಲೆಯೊಡೆದು
ನರ ಹರಿದು ಕರುಳೊಕ್ಕು ನೆಣನು
ಬ್ಬರಿಸಿ ಕಾಳಿಜ ಹಾಯ್ದು ನೆತ್ತರು
ಸುರಿದು ಹರಿದೊಗಲಿನಲಿ ಹೊರಳಿತು ವೈರಿ ಪಾಯದಳ ೩೯

ಮುಂದೆ ಕವಿವಂಬುಗಳು ಸುಭಟರ
ಕೊಂದು ಬಿದ್ದವು ಮತ್ತೆ ಬಳಿಯಲಿ
ಬಂದವಕೆ ಗುರಿಯಿಲ್ಲ ಹೇಳುವೆನೇನನದ್ಭುತವ
ಒಂದು ಗುರಿಗೆರಡಂಬ ತೊಡಬೇ
ಡೆಂದು ಪಾರ್ಥನ ಬೇಡಿಕೊಂಡವು
ಸಂದ ಮಂತ್ರಾಸ್ತ್ರಂಗಳೆಲೆ ಜನಮೇಜಯ ಕ್ಷಿತಿಪ ೪೦

ಓಿಕ್ಕಿದವು ಹಯ ಬಲದ ಸುಭಟರ
ನೊಕ್ಕಿ ತೂರಿದವಾನೆಗಳ ಸಾ
ಲಿಕ್ಕಿ ನಟ್ಟವು ಬಹಳ ರಕ್ತದ ಕೆಸರ ಕೈಗಳಲಿ
ಮುಕ್ಕಿದವು ಮಲೆತವರ ಮಾಂಸವ
ನಿಕ್ಕಿದವು ದ್ವಿಜಗಣಕೆ ಛತ್ರವ
ನಿಕ್ಕಿದವು ದಿಗುವಳೆಯದಲಿ ರಣಧೀರನಂಬುಗಳು ೪೧

ಒಗ್ಗೊಡೆಯದೌಕಿದ ಮಹೀಶರು
ಮುಗ್ಗಿದರು ಮುನ್ನಾಳ ಮೇಳದ
ವೊಗ್ಗಿನಲಿ ಮುಂಕೊಂಡು ಬಿರುದರು ಬಿಸುಟರೊಡಲುಗಳ
ನುಗ್ಗುನುಸಿಯಾಯ್ತತಿರಥರು ಗಜ
ಮೊಗ್ಗರದ ಮೊನೆ ಮುರಿದು ಕಾಲನ
ಸಗ್ಗಳೆಯ ಸೆಳೆದಂತೆ ಸುರಿದವು ರಕ್ತ ಧಾರೆಗಳು ೪೨

ಕಾಲದಲಿ ಪರಿಪಕ್ವವಾದ ವಿ
ಶಾಲಿತ ಸ್ಥಾವರದ ಜಂಗಮ
ಜಾಲವನು ಕಾಲಾಗ್ನಿ ಕವಿಕವಿದಟ್ಟಿ ಸುಡುವಂತೆ
ಮೇಲು ಮೇಲೊಡಗವಿವ ಬಾಣ
ಜ್ವಾಲೆಯಲಿ ಕುರುಸೈನ್ಯ ಕಾನನ
ಮಾಲೆಯನು ಕಲಿಪಾರ್ಥ ಪಾವಕನುರುಹಿದನು ಮುಳಿದು ೪೩

ಯಾವ ಬಿಲ್ಲಾಳಾವ ಲಾಘವ
ದಾವ ಗಾಡಿಕೆ ಯಾವ ಚಳಕವ
ದಾವ ಶರ ಸಂಧಾನವಾವ ವಿಹಾರವಾವ ಪರಿ
ರಾವಣನೊಳಿಂದ್ರಾರಿ ರಾಘವ
ದೇವ ಲಕ್ಷ್ಮಣರಲ್ಲಿ ಕಾಣೆ ನಿ
ದಾವ ಧನು ಶರವಿದ್ಯೆ ಮಝು ಭಾಪೆಂದನಾ ಹನುಮ ೪೪

ಕಾಣಬಾರದು ಬಿಡುವ ಹೂಡುವ
ಕೇಣವನು ಪರಮಾಣು ಪುಂಜವ
ಕಾಣವೇ ಕಣ್ಣುಗಳು ನಮ್ಮವು ಮರ್ತ್ಯರಾಲಿಗಳೆ
ಜಾಣಪಣವಿದು ಶಿವ ಸುದರ್ಶನ
ಪಾಣಿಗಳಿಗಹುದಮರಪತಿ ಪದ
ದಾಣೆ ಹುಸಿಯಲ್ಲೆನುತ ಬೆರಗಾಯಿತ್ತು ಸುರ ಕಟಕ ೪೫

ಏರುವಡೆದರು ಕೆಲರು ಕೆಲರಸು
ಸೂರೆಯೋದುದು ಮತ್ತೆ ಕೆಲರೆದೆ
ಡೋರುಗಳ ಪೂರಾಯ ಗಾಯದಲುಸುರ ತೆಗೆಬಗೆಯ
ಕಾರಿದರು ರಕ್ತವನು ಸಗ್ಗಕೆ
ಗೂರು ಮಾರಾಡಿದರು ತಲೆಗಳ
ಹೇರಿದರು ಹರಣವನುವೊಟ್ಟಿಗೆ ಕಾಲನರಮನೆಗೆ ೪೬

ಚೆಲ್ಲಿ ಹೋಯಿತು ಕೆಲಕೆ ಕೆಲಬರು
ಬಿಲ್ಲ ಬಿರುಕೋಲುಗಳ ಬಿಸುಟರು
ಗಲ್ಲೆಗೆಡೆದರು ಕೆಲರು ಪಾರ್ಥನ ಕೋಲ ತೋಹಿನಲಿ
ಮೆಲ್ಲ ಮೆಲ್ಲನೆ ಸರಿವ ಕೌರವ
ಮಲ್ಲನನು ಕಂಡಟ್ಟಿದನು ತುರು
ಗಳ್ಳ ಹೋಗದಿರೆನುತ ಮೂದಲಿಸಿದನು ಕಲಿಪಾರ್ಥ ೪೭

ಕಾಯಲಾಪರೆ ಕರೆಯಿರಾ ಕ
ರ್ಣಾಯತಾಸ್ತ್ರರನಕಟ ಕೌರವ
ರಾಯ ಸಿಲುಕಿದನೆಲ್ಲಿ ಭೀಷ್ಮ ದ್ರೋಣ ಕೃಪರೆನುತ
ಬಾಯ ಬಿಡೆ ಕುರುಸೇನೆ ಗುರು ಗಾಂ
ಗೇಯ ಶಕುನಿ ವಿಕರ್ಣ ಕೃಪ ರಾ
ಧೇಯ ಸೈಂಧವ ಚಿತ್ರಸೇನಾದಿಗಳು ಜೋಡಿಸಿತು ೪೮

ಇತ್ತ ತುರುಗಳ ಬಿಸುಟು ರಾಯನ
ತೆತ್ತಿಗರು ತಲ್ಲಣಿಸಿ ಹಾಯ್ದರು
ಹೊತ್ತಿದವು ಮುಸುಡುಗಳ ಸಂಗರ ವಿಜಯ ಗರ್ವಿತರ
ಸುತ್ತ ಗೋವರ ಸನ್ನೆಯಲಿ ಪುರ
ದತ್ತ ಮುಂದಾದವು ಪಶುವ್ರಜ
ವುತ್ತರನು ಮುಳುಗಿದನು ಪರಿತೋಷ ಪ್ರವಾಹದಲಿ ೪೯

ಬಿಗಿದ ಕೆಚ್ಚಲ ತೊರೆದೊಗುವ ಹಾ
ಲುಗಳ ವಿಂಗೆ ಸೂಳೆದ್ದ ಬಾಲವ
ಮೊಗ ನೆಗಹಿ ದೆಸೆದೆಸೆಯ ನೋಡುತ ಬೆಚ್ಚಿ ಬಿರುವರಿವ
ಅಗಿದು ಸರಳಿಸಿ ನಿಲುವ ಹೊಸಬರ
ಸೊಗಡಿಗವ್ವಳಿಸುತ್ತ ಗೋವರು
ತೆಗೆದ ಪಥದಲಿ ತೆಕ್ಕೆವರಿದವು ಹಿಂಡು ಹಿಂಡಿನಲಿ ೫೦

ಕೆಲವು ಕಡೆಗಂದಿಗಳು ಬಾಲವ
ಬಳಿಗೆ ಮೂಗಿಟ್ಟಡಿಗಡಿಗೆ ಮನ
ನಲಿದು ಮೋರೆಯನೆತ್ತಿ ಸುಕ್ಕಿಸಿ ಮತ್ತೆ ಹರಿ ಹರಿದು
ಮಲೆತು ಕಾಲಲಿ ನೆಲನ ಕೆರೆದ
ವ್ವಳಿಸಿ ಮತ್ತೊಂದಿದಿರುವರೆ ಬಲು
ಸಲಗನೀಡಿರಿದಾಡುತಿರ್ದುದು ಹಿಂಡು ಹಿಂಡಿನಲಿ ೫೧

ತಿರುಗಿ ಕೆಂದೂಳಿಡುತ ತುರುಗಳು
ಪುರಕೆ ಹಾಯ್ದವು ನಲವು ಮಿಗಲು
ತ್ತರ ಕಿರೀಟಿಗಳಾಂತುಕೊಂಡರು ಮತ್ತೆ ಕಾಳಗವ
ಅರಸು ಮೋಹರ ಮುರಿದು ಹರಿಬವ
ಮರಳಿಚುವ ಮಿಡುಕುಳ್ಳ ವೀರರ
ಧುರಕೆ ಬರಹೇಳೆನುತ ಬಾಣವ ತೂಗಿದನು ಪಾರ್ಥ ೫೨

ಎಂಟನೆಯ ಸಂಧಿ

ಸೂ. ರಾಯ ರಿಪುಬಲಜಲಧಿ ವಡಬನ
ಜೇಯನರ್ಜುನನಖಿಳ ಕೌರವ
ರಾಯ ದಳವನು ಜಯಿಸಿದನು ಸಮ್ಮೋಹನಾಸ್ತ್ರದಲಿ

ಮರಳಿದವು ತುರು ಮಾರಿಗೌತಣ
ಮರಳಿ ಹೇಳಿತು ಹಸಿದ ಹೆಬ್ಬುಲಿ
ಮೊರೆಯ ದನಿದೋರಿದವು ಹುಲುಮೃಗವೇನನುಸುರುವೆನು
ಧರಣಿಪನ ಹಿಂದಿಕ್ಕಿ ಸೌಬಲ
ದುರುಳ ದುಶ್ಶಾಸನ ಜಯದ್ರಥ
ರುರುಬಿದರು ತರುಬಿದರು ಪರಬಲ ಕಾಲಭೈರವನ ೧

ಹತ್ತು ಸಾವಿರ ರಥ ಸಹಿತ ಭಟ
ರೊತ್ತಿ ಕವಿದರು ಲಗ್ಗೆವರೆಯಲಿ
ಬಿತ್ತರಿಸಿ ಬೈಬೈದು ಸಾರುವ ಗೌರುಗಹಳೆಗಳ
ಸತ್ತಿಗೆಯ ಸಾಲುಗಳೊಳಂಬರ
ಕೆತ್ತುದೆನೆ ಕುಲಶೈಲ ನಿಚಯದ
ನೆತ್ತಿ ಬಿರಿಯಲು ಮೊಳಗಿದವು ನಿಸ್ಸಾಳಕೋಟಿಗಳು ೨

ಚಂಬಕನ ಹರೆ ಡಕ್ಕೆ ಡಮರುಗ
ಬೊಂಬುಳಿಯ ಗೋಮುಖದ ಡೌಡೆಯ
ಕೊಂಬು ಕಹಳೆಯ ರಾಯ ಗಿಡಿಮಿಡಿ ಪಟಹ ಡಿಂಡಿಮದ
ತಂಬಟದ ನಿಸ್ಸಾಳವಂಬರ
ತುಂಬಿದುದು ನೆಲ ಕುಸಿಯೆ ಬಲವಾ
ಡಂಬರದಲರ್ಜುನನ ಮುಸುಕಿತು ದೊರೆಯ ಸನ್ನೆಯಲಿ ೩

ಮರಳಿದವು ತುರುವೆಂಬ ಗರ್ವದ
ಗಿರಿಗೆ ಕೋ ಕುಲಿಶವನು ಸೇನೆಯ
ನೊರೆಸಿದುತ್ಸವ ಜಲಧಿಗಿದೆ ಕೋ ವಾಡಬಾನಲನ
ಅರಸನಳುಕಿದನೆಂಬ ಜಯದು
ಬ್ಬರದ ಬೆಳೆಸಿರಿಗಿದೆ ನಿದಾಘದ
ಬಿರುಬಿಸಿಲು ಕೊಳ್ಳೆಂದು ಕೈಗೊಂಡೆಚ್ಚರತಿರಥರು ೪

ಮೊಗಕೆ ಹರಿಗೆಯನೊಡ್ಡಿ ಕಾಲಾ
ಳಗಿದು ಕವಿದುದು ಸರಳ ಪರಿಯಲಿ
ಬಿಗಿದು ಬಿಲ್ಲಾಳೌಕಿತುರವಣಿಸಿದರು ಸಬಳಿಗರು
ಉಗಿದಡಾಯುಧದಲಿರಿದರು ಭಾ
ಷೆಗಳ ರಾವ್ತರು ಕೆಂಗರಿಯ ಕೋ
ಲುಗಳ ಹೆಮ್ಮಳೆಗರೆದು ಕವಿದರು ಜೋದರುರವಣಿಸಿ ೫

ಅರರೆ ರಾವುತು ರಾವುತೆಂಬ
ಬ್ಬರಣೆ ಮಸಗಿದುದೊಂದು ದೆಸೆಯಲಿ
ಸರಿಸ ಸಬಳಿಗ ಪೂತು ಪಾಯಕುಯೆಂಬ ಕಳಕಳಿಕೆ
ಧಿರುರೆ ಸಾರಥಿ ಹಳು ಹಳೆಂಬ
ಬ್ಬರಣೆ ಮಸಗಿದುದೊಂದು ಕಡೆಯಲಿ
ಕರಿಘಟೆಯ ಕಡುಹೊಂದು ಕಡೆಯಲಿ ಮುಸುಕಿತರ್ಜುನನ ೬

ಸುರಪನಡವಿಯ ಚುಚ್ಚಿದೊಡೆ ಸರು
ರರಮನೆಯ ಗಾಯಕರ ಗೆಲಿದೊಡೆ
ಜರಡು ತಂತ್ರದ ಮಾನನೆಚ್ಚೊಡೆ ರಾಯ ಕಟಕದಲಿ
ಗೊರವನೊಳು ಕಾದಿದೊಡೆ ಹೆಂಗುಸ
ನಿರುಳು ಕದ್ದೋಡಿದೊಡೆ ದಿಟ
ನೀ ಧುರಕೆ ಧೀರನೆ ಪಾರ್ಥ ಫಡಯೆನುತೆಚ್ಚರತಿರಥರು ೭

ಭಂಡರುಲಿದೊಡೆ ಗರುವರದ ಮಾ
ಕೊಂಡು ನುಡಿವರೆ ಸಾಕಿದೇತಕೆ
ದಿಂಡುದರಿವೆನು ನಿಮಿಷ ಸೈರಿಸಿ ನಿಂದು ಕಾದುವೊಡೆ
ಕೊಂಡ ಹೆಜ್ಜೆಗೆ ಹಂಗಿಗರು ಮಿಗೆ
ಗಂಡುಗೆಡದಿರಿ ನಿಮ್ಮ ಬಗೆಗಳ
ಕಂಡು ಬಲ್ಲೆನೆನುತ್ತ ಫಲುಗುಣನೆಚ್ಚನತಿ ರಥರ ೮

ಗುರುಸುತನ ಬಳಿ ರಥವನೈಸಾ
ವಿರವ ಕೊಂದನು ಕರ್ಣನೊಡನೆಯ
ವರ ಮಹಾರಥರೆಂಟು ಸಾವಿರವನು ರಣಾಗ್ರದಲಿ
ಗುರು ನದೀಜರ ಬಳಿ ರಥವ ಸಾ
ವಿರವ ಕೃಪ ಸೈಂಧವ ಸುಯೋಧನ
ರರಸು ಥಟ್ಟಿನ ರಥವ ಮುರಿದನು ಹತ್ತು ಸಾವಿರವ ೯

ತುರಗ ದಳವೆಂಬತ್ತು ಸಾವಿರ
ಕರಿಘಟೆಯನೈವತ್ತು ಸಾವಿರ
ವರರಥವ ಹುಡಿಮಾಡಿದನು ಹನ್ನೆರಡು ಸಾವಿರವ
ಧುರಕೆ ವೆಗ್ಗಳವಾದ ರಥಿಕರ
ಶಿರವ ತರಿದನು ಮೂರು ಕೋಟಿಯ
ನರಸು ಕಾಲಾಳುಗಳ ಗಣನೆಯನರಿಯೆ ನಾನೆಂದ ೧೦

ಸವಗ ಸೀಳಿತು ಕೃಪನ ಭೀಷ್ಮನ
ಕವಚ ಹರಿದುದು ದ್ರೋಣ ನೊಂದನು
ರವಿಯ ಮಗ ಮಸೆಗಂಡನಶ್ವತ್ಥಾಮ ಮೈಮರೆದ
ಅವನಿಪತಿಗೇರಾಯ್ತು ಸಲೆ ಸೈಂ
ಧವ ಶಕುನಿ ದುಶ್ಶಾಸನಾದಿಗ
ಳವಯವದಲಂಬುಗಳನಾಯ್ದರು ತೋದ ರಕುತದಲಿ ೧೧

ಕಡಿವಡೆದುದಾ ಚೂಣಿಬಲ ಬೆಂ
ಗೊಡದ ನಾಯಕರಾಂತು ತಮಗಿ
ನ್ನೊಡಲುಗಳ ಮೇಲಾಶೆಯೇಕಿನ್ನೆನುತ ಮಿಗೆ ಮಸಗಿ
ಸೆಡೆದು ಸೊಪ್ಪಾದಖಿಳ ಸುಭಟರ
ಗಡಣವನು ಮೇಳೈಸಿ ಮಂಗುಳವ
ಗಡಿಸಿ ನೂಕಿತು ಸೇನೆ ಭೀಷ್ಮ ದ್ರೋಣರಾಜ್ಞೆಯಲಿ ೧೨

ಖತಿಯಲಶ್ವತ್ಥಾಮನೀ ರವಿ
ಸುತನ ಜರೆದನು ಗಾಯವಡೆದೈ
ಪ್ರತಿಭಟನ ಭಾರವಣೆ ಲೇಸೇ ಕರ್ಣ ನೀನರಿವೈ
ಅತಿಬಲನು ನೀನಹಿತ ಬಲ ವನ
ಹುತವಹನು ನೀನಿರಲು ಕುರು ಭೂ
ಪತಿಯ ಬಲ ನುಗ್ಗಾಯ್ತಲಾ ನಿಷ್ಕರುಣಿ ನೀನೆಂದ ೧೩

ಭಟನು ನಾನಿರಲುಭಯ ರಾಯರ
ಕಟಕದೊಳಗಿನ್ನಾವನೆಂದು
ಬ್ಬಟೆಯ ನುಡಿಗಳ ನುಡಿದು ಬಾಚಿದೆ ಕೌರವನ ಧನವ
ಭಟನು ಫಲುಗುಣನಹನು ತೋರಾ
ಪಟುತನವನೆಲೆಯಪಜಯ ಸ್ತ್ರೀ
ವಿಟನೆ ವಿಹ್ವಲನಾದೆಯೆಂದನು ದ್ರೋಣಸುತ ನಗುತ ೧೪

ಆಗಲೇರಿಸಿ ನುಡಿದ ನುಡಿ ತಾ
ನೀಗಳೇನಾಯಿತ್ತು ನುಡಿಗಳ
ತಾಗನರಿಯದೆ ತರಿಚುಗೆಡೆವರೆ ಗರುವರಾದವರು
ಈಗಳಾವ್ ಹಾರುವರು ಕ್ಷತ್ರಿಯ
ನಾಗಿ ನೀನರ್ಜುನನ ತುರುಗಳ
ಬೇಗ ಮರಳಿಚಿ ತಂದು ತೋರದೆ ಮಾಣೆ ದಿಟವೆಂದ ೧೫

ಎಲವೊ ಗರುಡಿಯ ಕಟ್ಟಿ ಸಾಮವ
ಕಲಿಸಿ ಬಳಿಕಾ ಕೋಲ ಮಕ್ಕಳ
ಬಲದಿ ಬದುಕುವ ಕೃಪಣ ವೃತ್ತಿಯ ನಿಮ್ಮ ಕೂಡೆಮಗೆ
ಕಲಹವೇತಕೆ ಕಾಣ ಬಹುದೆಂ
ದಲಘು ಭುಜಬಲ ಭಾನುಸುತ ಕಡು
ಮುಳಿದು ಘಡ ಘಡ ಪಾರ್ಥ ಮೈದೋರೆನುತ ಮಾರಾಂತ ೧೬

ಇತ್ತಲಿತ್ತಲು ಪಾರ್ಥ ನಿಲು ನಿಲು
ಮುತ್ತಯನ ಹಾರುವರನಂಜಿಸಿ
ಹೊತ್ತುಗಳೆದೊಡೆ ಹೋಹುದೇ ಕೈದೋರು ಮೈದೋರು
ತೆತ್ತಿಗರ ಕರೆ ನಿನ್ನ ಬೇರನು
ಕಿತ್ತು ಕಡಲೊಳು ತೊಳೆವ ರಿಪುಭಟ
ಮೃತ್ಯುವರಿಯಾ ಕರ್ಣನೆನುತಿದಿರಾಗಿ ನಡೆತಂದ ೧೭

ಉಂಟು ನೀನಾಹವದೊಳಗೆ ಗೆಲ
ಲೆಂಟೆದೆಯಲಾ ನಿನ್ನ ಹೋಲುವ
ರುಂಟೆ ವೀರರು ಕೌರವೇಂದ್ರನ ಬಹಳ ಕಟಕದಲಿ
ಟೆಂಟಣಿಸದಿದಿರಾಗು ನಿನ್ನಯ
ಸುಂಟಿಗೆಯನಿತ್ತಖಿಳ ಭೂತದ
ನಂಟನರ್ಜುನನೆನಿಸಿಕೊಂಬೆನು ಕರ್ಣ ಕೇಳೆಂದ ೧೮

ಚಕಿತ ಚಾಪರು ಗಾಢ ಬದ್ಧ
ಭ್ರುಕುಟಿ ಭೀಷಣಮುಖರು ರೋಷ
ಪ್ರಕಟ ಪಾವಕ ವಿಸ್ಫುಲಿಂಗರು ಹೊಕ್ಕು ಸಮತಳಿಸಿ
ವಿಕಟ ಶೌರ್ಯೋತ್ಕಟ ಮಹಾ ನಾ
ಯಕರು ನಿಷ್ಠುರ ಸಿಂಹ ಗರ್ಜನೆ
ವಿಕಳಿತಾಚಲ ಸನ್ನಿವೇಶರು ಹೊಕ್ಕು ತರುಬಿದರು ೧೯

ಪೂತುರೇ ಬಿಲುಗಾರ ಮಝರೇ
ಸೂತ ನಂದನ ಬಾಣ ರಚನಾ
ನೂತನದ ಬಿಲುವಿದ್ಯೆ ಭಾರ್ಗವ ಸಂಪ್ರದಾಯವಲ
ಆತುಕೊಳ್ಳೈ ನಮ್ಮ ಬಲುಮೆಗ
ಳೀತರತಿಶಯವೆನುತ ಸರಳಿನ
ಸೇತುವನು ಕಟ್ಟಿದನು ಗಗನಾಂಗಣಕೆ ಕಲಿಪಾರ್ಥ ೨೦

ಮೇಲುಗೈಯಹೆ ಬಿರುದರೊಳು ಬಿ
ಲ್ಲಾಳು ನೀನಹೆ ಚಾಪ ವಿದ್ಯಾ
ಭಾಳನೇತ್ರನ ಗರುಡಿಯಲ್ಲಾ ಕಲಿತ ಮನೆ ನಿನಗೆ
ಕೋಲು ನಮ್ಮವು ಕೆಲವು ಸಮುಗೈ
ಯಾಳೆ ನಿಮಗಾವೆನುತ ನೋಟಕ
ರಾಲಿ ರ್ಝೋಂಮಿಡೆ ಕರ್ಣ ತುಂಬುಕಿದನಂಬಿನಂಬುಧಿಯ ೨೧

ಅಹಹ ಫಲುಗುಣ ನೋಡಲಮ್ಮೆನು
ಬಹಳ ಬಾಣಾದ್ವೈತವಾದುದು
ಮಹಿ ಮಹಾದೇವೆನುತ ಸಾರಥಿ ಮುಚ್ಚಿದನು ಮುಖವ
ರಹವ ಮಾಡದಿರೆಲವೊ ತನಗಿದು
ಗಹನವೇ ನೋಡೆನುತ ನರನತಿ
ಸಹಸದಲಿ ಕೆದರಿದನು ಕರ್ಣನ ಬಾಣ ಪಂಜರವ ೨೨

ವೀರನಲ್ಲಾ ಬನದ ರಾಜ ಕು
ಮಾರನಲ್ಲಾ ಕೌರವನ ಬಡಿ
ಹೋರಿಯಲ್ಲಾ ತಿರಿದಿರೈ ದಿಟವೇಕಚಕ್ರದಲಿ
ನಾರಿಯರ ನಾಟಕದ ಚೋಹವ
ನಾರು ತೆಗೆದರು ಪಾರ್ಥ ನಿನಗೀ
ಶೌರಿಯಂದ ಸಿರಿಯೆಂತೆನುತ ತೆಗೆದೆಚ್ಚನಾ ಕರ್ಣ ೨೩

ಬಲುಗಡಿಯನಹೆ ಬೇಟೆಗಾರರ
ಬಳಗವುಳ್ಳವನಹೆ ವಿರೋಧಿಯ
ದಳಕೆ ನೀನೊಡ್ಡುಳ್ಳ ಭಟನಹೆ ಸ್ವಾಮಿ ಕಾರ್ಯದಲಿ
ತಲೆಯ ತೆರುವವನಹೆ ಕುಭಾಷೆಗೆ
ಮುಳಿವವರು ನಾವಲ್ಲ ಸೈರಿಸು
ಬಳಿಕೆನುತ ಕಲಿಪಾರ್ಥ ಸುರಿದನು ಸರಳ ಸರಿವಳೆಯ ೨೪

ಅದ್ದನೋ ಬಾಣಾಂಬುಧಿಯಲೊಡೆ
ಬಿದ್ದನೋ ವಿತಳದಲಿ ಮೇಣ್ವಿಧಿ
ಕದ್ದನೋ ಕೈವಾರವೇತಕೆ ಕಾಣೆನಿನಸುತನ
ತಿದ್ದಿ ತಾತನ ದೆಸೆ ನದೀಸುತ
ನಿದ್ದನಾದೊಡೆ ಕೌರವೇಂದ್ರನ
ಹೊದ್ದ ಹೇಳೆಂದೊದರುತಿರ್ದುದು ಕೂಡೆ ಕುರುಸೇನೆ ೨೫

ಇಡಿದ ಮೋಡದ ಮುತ್ತಿಗೆಯ ಮೇ
ಲೊಡೆದು ಮೂಡುವ ರವಿಯವೋಲ್ ನೆರೆ
ಕಡಿದು ಶರ ಪಂಜರವ ಮುಸುಕಿದನರ್ಜುನನ ರಥವ
ನಡುಗಿದನು ವೈರಾಟ ಹಯವಡಿ
ಗಡಿಗೆ ನೊಂದವು ಹನುಮನಂಬರ
ವೊಡೆಯೆ ಬೊಬ್ಬಿರಿದನು ಮಹಾದ್ಭುತವಾಯ್ತು ನಿಮಿಷದಲಿ ೨೬

ಸೋಲವಾಯಿತು ಕರ್ಣಗೆಂಬರ
ನಾಲಗೆಯ ಕೊಯ್ಯೆಲವೊ ಬಿಡು ಬಿ
ಲ್ಲಾಳು ರಾಯನ ಪಟ್ಟದಾನೆ ವಿರೋಧಿ ಭೂಪತಿಯ
ಭಾಳದಕ್ಕರ ತೊಡೆಯಿತೋ ತೆಗೆ
ಕಾಳಗವನೆಂದಖಿಳ ಕುರುಬಲ
ಜಾಲ ಬೊಬ್ಬಿಡೆ ಕರ್ಣ ಮೆರೆದನು ಬಿಲ್ಲ ಬಲುಮೆಯಲಿ ೨೭

ಅರಿಭಟನ ಶರಜಾಲವನು ಸಂ
ಹರಿಸಿದನು ನಿಮಿಷದಲಿ ಫಲುಗುಣ
ನೆರಡು ಶರದಲಿ ಸಾರಥಿಯನೈದಂಬಿನಲಿ ಹಯವ
ಶರ ಚತುಷ್ಟಯದಿಂದ ಕರ್ಣನ
ಕರದ ಬಿಲ್ಲನು ಕಡಿಯೆ ಭಗ್ನೋ
ತ್ಕರುಷ ಭಂಗಿತನಾಗಿ ಮುರಿದನು ಮೌನದಲಿ ಕರ್ಣ ೨೮

ಓಟವೇ ಅಪಜಯದ ಬೊಡ್ಡಿಯ
ಬೇಟವೇ ಬೆಸಗೊಳ್ಳಿರೈ ಒಳ
ತೋಟಿಗೊತ್ತಾಳಹುದು ನಾಲಗೆಯಿಾಗಳೇನಾಯ್ತು
ಆಟವಿಕ ಭೂಪತಿಯ ಕೀರ್ತಿಯ
ಕೂಟಣಿಗರೊಗ್ಗಾಯ್ತು ತೆಗೆ ಮರು
ಳಾಟವಿನ್ನೇಕೆನುತ ಪಾರ್ಥನ ತಾಗಿದನು ದ್ರೋಣ ೨೯

ಇದಿರುಗೊಳ್ಳೈ ಪಾರ್ಥ ವಿಪ್ರರಿ
ಗದಟುತನವೆಲ್ಲಿಯದು ಕರ್ಣನ
ಸದೆಬಡಿದ ಸಾಹಸಕೆ ಹಿಗ್ಗದಿರೆಮ್ಮ ಕೈಗುಣವ
ಕದನದಲಿ ನೀ ನೋಡು ಕೈ ಸಾ
ರಿದವು ಗಡ ಕಾಮಾರಿ ಹಿಡಿವ
ಗ್ಗದ ಶರಾವಳಿಯದರ ಪರಿಯೆಂತೆಮಗೆ ತೋರೆಂದ ೩೦

ಇದಿರುಗೊಂಡೆನು ವಂದಿಸಿದೆನೆ
ಮ್ಮುದಯ ನಿಮ್ಮದು ನಿಮ್ಮ ಕೃಪೆಯಲಿ
ವಿದಿತವೆನಗೀ ವಿದ್ಯೆ ನೀವ್ ಕಾಮಾರಿ ಮುರವೈರಿ
ಹೃದಯ ನಿಮ್ಮದು ಕಾಳಗಕೆ ನಿ
ಮ್ಮಿದಿರೊಳಾಳೇ ತಾನು ಕರುಣಾ
ಸ್ಪದರು ನೀವೆಂದೆಚ್ಚನರ್ಜುನನವರ ಸಿರಿಪದಕೆ ೩೧

ವಿನಯವುಚಿತವೆ ತತ್ತ ಸಮರದ
ಮೊನೆಯೊಳಾರಿದಿರಾದಡಿರಿವುದು
ಜನಪರಿಗೆ ಕರ್ತವ್ಯವದು ಸಾಕುಳಿದ ಮಾತೇನು
ತನುಜ ಸೈರಿಸು ಸೈರಿಸೆಂದೆ
ಚ್ಚನು ನಿರಂತರ ಬಾಣ ವರುಷವ
ನನಿಮಿಷಾವಳಿ ಪೂತುರೆನೆ ಕೈದೋರಿದನು ದ್ರೋಣ ೩೨

ಭಾವಿಸಲು ಪ್ರತಿಬಿಂಬದಲಿ ಬೇ
ದರಾವುತಿಶಯವುಂಟು ನೀವೆನ
ಗಾವ ಪರಿಯಲಿ ಕಲಿಸಿದಿರಿ ನಿಮಗೊಪ್ಪಿಸುವೆನವನು
ನೀವು ನೋಡುವುದೆನುತ ನರನೆಸ
ಲಾವುದಂಬರವಾವುದವನಿಯ
ದಾವುದರಿ ಬಲವೆನಲು ಹಬ್ಬಿತು ಪಾರ್ಥ ಶರಜಾಲ ೩೩

ವಿಷಯ ಲಂಪಟತನದಲಾವ್ ನಿ
ರ್ಮಿಸಿದೆವಶ್ವತ್ಥಾಮನನು ನ
ಮ್ಮೆಸೆವ ಮೋಹದ ಕಂದನೈಯೆಲೆಪಾರ್ಥ ನೀನೆಮಗೆ
ಎಸುಗೆಗಾರರದಾರಿಗೀ ಶರ
ವಿಸರ ಸಂಭವಿಸುವುದಿದಾರಿಗೆ
ವಿಷಮ ವೀರನ ಕೈಯ ಚಳಕವಿದೆಂದನಾ ದ್ರೋಣ ೩೪

ಎನುತ ಸುರಿದನು ಸರಳ ಸಾರವ
ನನಲ ಗರ್ಭದ ಬಾಯ ಧಾರೆಗ
ಳನಿಲ ಗರ್ಭದ ಗರಿಗಳಶನಿಯ ಗರ್ಭ ಮಿಂಟೆಗಳ
ಮೊನೆಯ ಬಂಬಲುಗಿಡಿಯ ಹೊರಗಿನ
ತನಿಹೊಗೆಯ ಹೊದರುಗಳ ಪುಂಖ
ಧ್ವನಿಯ ದಟ್ಟಣೆ ಮಿಗಲು ಕವಿದವು ದ್ರೋಣನಂಬುಗಳು ೩೫

ದೇವ ಭಾರದ್ವಾಜ ಬಲು ವಿ
ದ್ಯಾ ವಿಷಯ ನವರುದ್ರ ಘನ ಶ
ಸ್ತ್ರಾವಳೀ ನಿರ್ಮಾಣ ನೂತನ ಕಮಲಭವಯೆನುತ
ಕೋವಿದನು ಶರತಿಮಿರವನು ಗಾಂ
ಡೀವಿಯಗಣಿತ ಬಾಣ ಭಾನು ಕ
ರಾವಳಿಯಲಪಹರಿಸಿದನು ಸುರರಾಜಸುತ ನಗುತ ೩೬

ಹಿಳುಕನೀದುದೊ ಗಗನವಂಬಿನ
ಜಲಧಿ ಜರಿದುದೊ ಪಾರ್ಥನೆಂಬ
ಗ್ಗಳ ವಿರಿಂಚನ ಬಾಣ ಸೃಷ್ಟಿಯೊ ಬಲ್ಲನಾವವನು
ಇಳೆಯ ಮರ್ತ್ಯರು ಶಿವ ಶಿವಾ ತೆಗೆ
ಫಲುಗುಣಗೆ ಸರಿಯೆಂಬವರ ಬಾಯ್
ಹುಳಿವುದೋ ಗುಣಕೇಕೆ ಮತ್ಸರವೆಂದುದಮರಗಣ ೩೭

ಬಳಿಕ ಪಾರ್ಥನ ಬಾಣದಲಿ ಬಸ
ವಳಿಯೆ ಸಾರಥಿ ಮೆಲ್ಲ ಮೆಲ್ಲನೆ
ತೊಲಗಿಸಿದನಾ ರಥವನಿತ್ತಲು ಕರ್ಣನೀಕ್ಷಿಸಿದ
ಎಲೆಲೆ ಕಟಕಾಚಾರ್ಯ ಗೆಲಿದನು
ಫಲುಗುಣನನಿನ್ನೇನು ಕೌರವ
ಬಲದ ಹಗೆ ಹರಿವಾಯ್ತು ರಾಜಾಭ್ಯುದಯವಿನ್ನೆಂದ ೩೮

ಫಡ ಫಡೆಲವೋ ಕರ್ಣ ಸಾರಥಿ
ಮಡಿದರೇನದು ಸೋಲವೇ ಕಾ
ಳ್ಗಡೆಯದಿರು ನೋಡಾದಡಯ್ಯನ ಹರಿಬದಾಹವವ
ನುಡಿಗೆ ತೆರನಾಯ್ತೆಂಬ ಖುಲ್ಲರ
ಬೆಡಗ ನೋಡೆನುತುಗ್ರ ಚಾಪವ
ಮಿಡಿದು ಮಂಡಿಸಿ ಹರನ ಹೋಲುವ ಸುಭಟ ಮಾರಾಂತ ೩೯

ಆವುದೈ ನೀನರಿದ ಬಿಲು ವಿ
ದ್ಯಾ ವಿಷಯ ಘನ ಚಾಪ ವೇದಾ
ರ್ಥಾವಳಿಯು ಶರಮೌಕ್ತಿಕೋಪನ್ಯಾಸವೆಂತೆಂತು
ಕೋವಿದರ ಭೂಸುರರ ಯುಕ್ತಿಯ
ನೀವು ಕೊಂಡಿರೆ ಶಸ್ತ್ರ ವಿದ್ಯಾ
ಭಾವ ಗೋಷ್ಠಿಯ ಬಲ್ಲಡರಿಯೆಂದೆಚ್ಚನರ್ಜುನನ ೪೦

ಅಕ್ರಮಂವ ತಿರಿಭುಂವನ ವಿದ್ಯಾ
ಚಕ್ರವರ್ತಿಗಳೆಂದು ನೀವೀ
ವಿಕ್ರಮಂದ ಮಾತಿನಲಿ ಮೇಗರೆ ಮೆರೆವ ಭಟರುಗಳೆ
ಶಕ್ರನಳುಕುವ ಬಾಹುಬಲ ರಿಪು
ಚಕ್ರದೊಳಗಿನ್ನಾರಿಗುಂಟದು
ವಕ್ರ ಭಣಿತೆಗೆ ಸಲುವುದಶ್ವತ್ಥಾಮನೆನುತೆಚ್ಚ ೪೧

ಅರ್ಜುನನ ಶರವಿದ್ಯೆ ವಿವರಿಸೆ
ದುರ್ಜಯವಲಾ ಗುರುವತನದಲಿ
ಗರ್ಜಿಸಿದೊಡೇನಹುದೆನುತ ಗುರುಸೂನು ಹರುಷದಲಿ
ನಿರ್ಜರರು ಮುಝು ಭಾಪುರೆನಲಾ
ವರ್ಜಿಸಿದ ತಿರುವಿನಲಿ ಸಂಗರ
ನಿರ್ಜಿತೇಂದ್ರಿಯನೆಸಲು ಕಣೆಗಳು ಕವಿದವಂಬರಕೆ ೪೨

ಗುರುತನೂಜನಲಾ ವಿಭಾಡಿಸಿ
ಹುರುಳುಗೆಡಿಸಲು ಬಹುದೆ ನೋಡು
ತ್ತರ ಸುಯೋಧನ ಸೈನ್ಯಶರಧಿಯ ಗುಂಪಿನತಿಬಲರ
ಹರನ ಸರಿದೊರೆಯಸ್ತ್ರ ವಿದ್ಯಾ
ಧರರು ಮರ್ತ್ಯರೊಳಾರು ಲೇಸೆಂ
ದುರುಳಿಗಡಿದನು ಪಾರ್ಥನಶ್ವತ್ಥಾಮನಂಬುಗಳ ೪೩

ಗುರುಸುತನ ಶರಜಾಲವನು ಸಂ
ಹರಿಸಿ ಮಂಗುಳಸ್ತ್ರಾಘವನು ವಿ
ಸ್ತರಿಸಿದನು ಕಲಿಪಾರ್ಥನೀತನ ಸರಳುಗಳ ಸವರಿ
ತರಣಿ ಬಿಂಬವ ನಭವ ಹೊಳ್ದುದು
ಗುರುಸುತನ ಸಾಮರ್ಥ್ಯವಿಂತಿ
ಬ್ಬರಿಗೆ ಸಮಬಲವಾಗಿ ಸಮತಳಿಸಿತ್ತು ರಣಕೇಳಿ ೪೪

ತೀರವರ್ಜುನನಂಬು ರಣದಲಿ
ತೀರಿದವು ಗುರುಸುತನ ಶರ ಕೈ
ವಾರವೇ ಕೈಗುಂದಿ ನಿಂದನು ದ್ರೋಣನಂದನನು
ಮೇರು ಮೊಗದಿರುಹಿತ್ತಲಾ ರಣ
ಧೀರನಶ್ವತ್ಥಾಮ ಸೋತನು
ಸಾರೆನುತ ಕೃಪನುರುಬಿದನು ತರುಬಿದನು ಫಲುಗುಣನ ೪೫

ತಂದೆ ಮಕ್ಕಳು ಸೋತರಿನ್ನೇ
ನೆಂದು ಮುಯ್ಯಾನದಿರು ನಿಲು ನಿ
ಲ್ಲೆಂದು ಕೃಪನಡಹಾಯ್ದು ಪಾರ್ಥನ ರಥವ ತರುಬಿದನು
ಬಂದ ಪರಿ ಲೇಸೆನುತ ಫಲುಗುಣ
ನೊಂದು ಕವಲಂಬಿನಲಿ ಗುರುಗಳಿ
ಗಿಂದು ವಂದಿಸಬೇಕೆನುತ ಕೀಲಿಸಿದನಾ ರಥವ ೪೬

ತರಹರಿಸಿ ಶರವೈದರಲಿ ಸಂ
ಹರಿಸಿಕೊಳ್ಳೆಂದೆಚ್ಚೊಡೀತನ
ತುರಗವನು ತಾಗಿದವು ನೊಂದವು ರಥದ ವಾಜಿಗಳು
ಕೆರಳಿ ಫಲುಗುಣನರ್ಧ ಚಂದ್ರದ
ಸರಳಿನಲಿ ಸಾರಥಿಯ ತುರಗವ
ಕರದ ಬಿಲ್ಲನು ಕಡಿಯೆ ತೊಲಗಿದನಾ ಕೃಪಾಚಾರ್ಯ ೪೭

ಎಲೆಲೆ ಕರ್ಣ ದ್ರೋಣ ಗುರುಸುತ
ರಲಘು ಭುಜಬಲ ಕೃಪನು ಹೊಕ್ಕಿರಿ
ದಳುಕಿದರು ಮಝು ಭಾಪುರೆಂತುಟೊ ಪಾರ್ಥನಗ್ಗಳಿಕೆ
ಗೆಲುವನೊಬ್ಬನೆ ನಮ್ಮ ಬಲದಲಿ
ನಿಲುಕಿ ಹಿಂಗುವ ಸುಭಟರಿನಿಬರು
ಸುಲಭವೆಮಗೀ ಸೋಲವೆಂದುದು ಕೂಡೆ ಕುರುಸೇನೆ ೪೮

ಬಾಯ ಬಿಟ್ಟುದು ಸಕಲ ಕೌರವ
ರಾಯದಳ ವಡಮುಖದಲದಟರು
ಹಾಯಿದರು ತಡವೇನು ತೆರದೆರೆಸಾಯ್ತು ಕುರುಸೇನೆ
ಕಾಯಬೇಕೆಂದೆನುತ ವರ ಗಾಂ
ಗೇಯ ಚಾಪವ ಮಿಡಿದು ಬೆರಳಲಿ
ಸಾಯಕವ ತೂಗುತ್ತ ತಡೆದನು ಪಾರ್ಥನುರವಣೆಯ ೪೯

ಓಡಿದವರಲ್ಲಲ್ಲಿ ಧೈರ್ಯವ
ಮಾಡಿತಚ್ಚಾಳೊಗ್ಗಿನಲಿ ಹುರಿ
ಗೂಡಿತಬ್ಬರ ಮಗುಳೆ ನಿಬ್ಬರವಾಯ್ತು ನಿಮಿಷದಲಿ
ಕೂಡೆ ಗರಿಗಟ್ಟಿತು ಚತುರ್ಬಲ
ಜೋಡು ಮಾಡಿತು ಕವಿದುದೀತನ
ಕೂಡೆ ಘನ ಗಂಭೀರ ಭೇರಿಯ ಬಹಳ ರಭಸದಲಿ ೫೦

ತೊಲಗು ರಾಯ ಪಿತಾಮಹನ ಖತಿ
ಬಲುಹು ತೆತ್ತಿಗರಹರೆ ರುದ್ರನ
ನಳಿನನಾಭನ ಕರೆಸು ನೀ ಶಿಶು ಸಾರು ಸಾರೆನುತ
ಉಲಿವ ಬಳಿಯ ಮಹಾರಥರ ಕಳ
ಕಳದ ಕಹಳೆಯ ಪಾಠಕರ ಗಾ
ವಳಿಯ ಬಿರುದಿನ ಬಹಳತೆಯಲೈತಂದನಾ ಭೀಷ್ಮ ೫೧

ಪೂತುರೇ ಕಲಿಪಾರ್ಥ ಭುವನ
ಖ್ಯಾತನಾದೈ ಕಂದ ದ್ರೋಣನ
ಸೂತಸುತ ಕೃಪ ಗುರುತನೂಜರ ಗೆಲಿದೆ ಬಳಿಕೇನು
ಬೀತುದೇ ನಿಮ್ಮವಧಿ ಕುರುಕುಲ
ಜಾತವನು ಹರೆಗಡಿದು ನಿಮ್ಮಯ
ಭೂತಳವನಾಳುವಿರೆ ನೀವೆಂದೆಚ್ಚನಾ ಭೀಷ್ಮ ೫೨

ನಿಮ್ಮ ಕಾರುಣ್ಯಾವಲೋಕನ
ವೆಮ್ಮ ಸಿರಿ ಬೇರೆಮಗೆ ಕಾಳಗ
ದಮ್ಮುಗೆಯ ವಿಕ್ರಮದ ವಿವರಣ ವಿದ್ಯೆ ಫಲಿಸುವುದೆ
ಬಿಮ್ಮು ಬೀಸರವಹುದೆ ನಿಮ್ಮಯ
ಸೊಮ್ಮಿನವರಿಗೆ ಬೇರೆ ರಾಜ್ಯದ
ಹೆಮ್ಮೆ ತಾ ನಮಗೇಕೆನುತ ಕೈಯೊಡನೆ ನರನೆಚ್ಚ ೫೩

ಎಸಲು ಪಾರ್ಥನ ಬಾಣವನು ಖಂ
ಡಿಸುತ ಸೂತನನೆರಡರಲಿ ಕೀ
ಲಿಸಿದನೈದಂಬಿನಲಿ ಹನುಮನ ಹಣೆಯನೊಡೆಯೆಚ್ಚ
ನಿಶಿತ ಶರವೆಂಟರಲಿ ಕವಚವ
ಕುಸುರಿದರಿದನು ನರನ ವಕ್ಷದ
ಬೆಸುಗೆ ಬಿಡೆ ಮೂರಂಬಿನಲಿ ಮುರಿಯೆಚ್ಚು ಬೊಬ್ಬಿರಿದ ೫೪

ಅರಿಯ ಶರಹತಿಗುತ್ತರನ ತನು
ಬಿರಿಯೆ ಬಳವಳಿದನು ಕಪೀಶ್ವರ
ನೊರಲಿದನು ರಾವಣನ ಗಾಯವ ನೆನೆದನಡಿಗಡಿಗೆ
ಮರೆದು ಮಲಗಿದ ಸೂತನನು ನಾ
ಲ್ಕೆರಡು ಗಳಿಗೆಯು ಬೀಸಿ ಮೂಗಿನೊ
ಳೆರಲ ಕಂಡನು ಪಾರ್ಥನೆತ್ತಿದನಳುಕಿದುತ್ತರನ ೫೫

ಕವಳವಿದ ಕೋ ಬಾಣ ಶಸ್ತ್ರಾ
ನಿವಹ ಧಾರಾಸ್ತಂಭವಿನ್ನಾ
ಹವದೊಳಂಜದಿರೆನುತೆ ಕೊಡಲುತ್ತರನು ದುಗುಡದಲಿ
ಬವರದಾದಿಯನರಿಯದನ ಕೊಂ
ದವನು ನೀನೋ ಭೀಷ್ಮನೋಯೆನ
ಲವನ ನುಡಿಗರ್ಜುನನು ನಗುತಪರಾಧವುಂಟೆಂದ ೫೬

ಹದುಳಿಸಿನ್ನಂಜದಿರು ಬಾಣೌ
ಘದ ವಿದಾರಣವಿದು ವಿಚಾರಿಸ
ಲೆದೆ ಬಿರಿದು ತಾ ನೊಂದೆನಿದೆ ನೋಡೆನ್ನ ಗಾಯವನು
ಒದೆದು ಕೊಳುತೈದಾನೆ ಸಿಂಧದ
ತುದಿಯ ಹನುಮನು ವಜ್ರಮಯ ದೇ
ಹದಲಿ ನಟ್ಟವು ಕೋಲು ಮುನಿದೊಡೆ ರುದ್ರನೀ ಭೀಷ್ಮ ೫೭

ಎಂದು ಮೂರಂಬಿನಲಿ ಗಂಗಾ
ನಂದನನ ಮುಸುಕಿದನು ಸಾರಥಿ
ನೊಂದನಾ ಧ್ವಜ ದಂಡವುಡಿದುದು ರಥ ವಿಸಂಚಿಸಿತು
ಮುಂದುಗೆಟ್ಟನು ಭೀಷ್ಮನಹುದೋ
ತಂದೆಯೆನುತಾರಂಬಿನಲಿ ಖತಿ
ಯಿಂದ ಪಾರ್ಥನನೆಸಲು ಥಟ್ಟುಗಿದಂಬು ಹಾರಿದವು ೫೮

ಒರತುದರ್ಜುನನೊಡಲಿನಲಿ ದುರು
ದುರಿಸಿ ಸುರಿದುದು ಅರುಣಮಯ ಜಲ
ನೆರವಣಿಗೆಯಲಿ ನಿಂದು ತೊಟ್ಟನು ನರ ಮಹಾ ಶರವ
ತರಿದನೆಡೆಯಲಿ ಭೀಷ್ಮನುರೆ ಬೊ
ಬ್ಬಿರಿದು ಬಳಿಕಾಗ್ನೇಯ ಬಾಣದ
ಗರಿಯ ಮಂತ್ರಿಸಿ ಹೂಡಿದನು ಕುರುಸೇನೆ ಕಳವಳಿಸೆ ೫೯

ವರುಣ ಬಾಣದಲಸ್ತ್ರವನು ಸಂ
ಹರಿಸಿದನು ಕಲಿ ಭೀಷ್ಮನೊಬ್ಬೊ
ಬ್ಬರು ಪರಾಜಯ ರೋಷಪಾವಕ ವಿಸ್ಫುಲಿಂಗಿತರು
ಹರಿಸಿದರು ಕೌಬೇರ ಮಾರುತ
ನಿರುತಿ ಯಮ ಪುರುಹೂತ ಶಂಕರ
ಪರಿ ಪರಿಯ ಪ್ರತ್ಯಸ್ತ್ರವನು ಗಾಂಗೇಯ ಫಲುಗುಣರು ೬೦

ಮಲೆತು ನಿಲುವೊಡೆ ಭೀಷ್ಮನಲ್ಲದೆ
ಕೆಲರು ಪಾರ್ಥನ ದಿವ್ಯ ಬಾಣಾ
ವಳಿಯ ಗಾರಾಗಾರಿಗಿದಿರೇ ಭೀಷ್ಮನುರವಣೆಗೆ
ಕಲಿಧನಂಜಯನಲ್ಲದಿದಿರಲಿ
ನಿಲುವರುಂಟೇ ಭುಜಗ ಸುರ ನರ
ರೊಳಗೆ ಕೆಲರೆಂದಿಂದ್ರ ನುಡಿದನು ಬೆರಳನೊಲೆದೊಲೆದು ೬೧

ಪೂತು ಪಾಯಕು ಪಾರ್ಥ ಬಿಲು ವಿ
ದ್ಯಾತಿಶಯದಲಿ ಭೀಷ್ಮನೀ ಪುರು
ಹೂತನಮರಾರಿಗಳ ಮಿಕ್ಕರಲಾ ಮಹಾದೇವ
ಈತಗಳು ಜನಿಸಿದೊಡೆ ಹಿಂದೆ ಮ
ಹೀತಳವ ಕದ್ದೊಯ್ವನೇ ಖಳ
ಸೀತೆ ಬನದಲಿ ನವೆವಳೇಯೆನುತಿರ್ದುದಮರಗಣ ೬೨

ಹಿಂದೆ ಕರ್ಣನ ಕೈಮೆಯನು ಗುರು
ನಂದನನ ಬಿಲುಗಾರತನವನು
ಮಂದರೋಪಮ ಧೈರ್ಯವಾಚಾರಿಯನ ಪರಿಣತೆಯ
ಇಂದು ಕೃಪನಗ್ಗಳಿಕೆಯನು ನಲ
ವಿಂದ ಕಂಡೆನಿದಾರ ಪರಿಯ
ಲ್ಲೆಂದನುತ್ತರನರ್ಜುನನಗೆ ಗಾಂಗೇಯನುರವಣೆಯ ೬೩

ಎನೆ ಕುಮಾರಕ ಕಾರ್ತವೀರ್ಯಾ
ರ್ಜುನನಾತನ ತೋರ ತೋಳಿನ
ಬನವ ಕಡಿದನು ವೀರಭಾರ್ಗವ ರಾಮನತಿ ಬಲನು
ಮುನಿದು ಮಲೆತೊಡೆ ಭೀಷ್ಮನಾತನ
ಮನಕೆ ಭೀತಿಯನಿತ್ತನೀತನೊ
ಳೆನಗೆ ಸರಿನೂಕುವುದೆ ಕಾಳಗವೆಂದನಾ ಪಾರ್ಥ ೬೪

ಮತ್ತೆ ಗಂಗಾಸೂನು ಪಾರ್ಥನ
ತೆತ್ತಿಸಿದನೈದಂಬಿನಲಿ ರಥ
ಕಿತ್ತು ಮಗುಚಲು ಮೂರು ವಜ್ರಾಸ್ತ್ರದಲಿ ಕೀಲಿಸಿದ
ಹುತ್ತಕುರಗನು ಬಗಿದು ಹೊಗುವವೊ
ಲುತ್ತರಿಸಿದುವು ಸರಳು ಮಿಗೆ ಧೃತಿ
ವೆತ್ತು ಫಲುಗುಣನವರನೆಚ್ಚನು ಹತ್ತು ಬಾಣದಲಿ ೬೫

ನರನ ಶರದಲಿ ಭೀಷ್ಮನೆದೆ ತನು
ಬಿರಿಯೆ ಮೈ ರೋಮಾಂಚಿಸಿತು ಸಲೆ ತರ
ಹರಿಸಲರಿಯದೆ ಮಲಗಿ ನಿಂದನು ರಥದ ಕಂಬುಗೆಯ
ಅರರೆ ಸೋತನು ಭೀಷ್ಮನಿನ್ನೇ
ನುರಿದುದೋ ಕುರುಸೇನೆ ಯಾವೆಡೆ
ದೊರೆಯೆನುತ ಬಾಯ್ಬಿಡಲು ಕೌರವರಾಯ ಮಾರಾಂತ ೬೬

ಸೀಳು ನಾಯ್ಗಳ ಬಾಯ ಕೆಲಬಲ
ದಾಳ ಹಂಗಿನ ದೊರೆಯೆ ಸುಭಟರ
ಸೋಲವದು ರಾಯರಿಗೆ ಸೋಲವೆ ನೂಕು ನೂಕೆನುತ
ಕೋಲ ಹೊದೆಗಳ ಕೆದರಿ ಸಿಂಧದ
ಮೇಲೆ ಹಾವನು ಹಾಯ್ಕಿ ಸಾರಥಿ
ಮೇಳವಿಸಲವನಿಪ ರಥವನು ನೆರೆದುದತಿ ರಥರು ೬೭

ಕಲಕಿ ಕೆದರಿದ ಬಲಜಲಧಿಯೊ
ಬ್ಬುಳಿಗೆ ಬಂದುದು ತಳಿತ ಸತ್ತಿಗೆ
ಗಳ ವಿಡಾಯಿಯಯಲಳ್ಳಿರಿವ ನಿಸ್ಸಾಳ ಕೋಟಿಗಳ
ಉಲಿವ ಕಹಳೆಯ ಬೈಗುಳೆಡಗೈ
ತಳದ ಬಾಯ್ಬಲಗೈಯನೊಲವುತ
ಬಳಿಕ ಭಟ್ಟರು ಹೊಗಳಿದರು ಕೌರವನ ಬಿರುದುಗಳ ೬೮

ಒಗ್ಗು ಮುರಿಯದೆ ಸೇನೆ ಮೊಳಗುವ
ಲಗ್ಗೆವರೆಯಲಿ ಹೆಣನ ತುಳಿದೊಡೆ
ಮುಗ್ಗಿ ಕವಿದುದು ಕೌರವೇಂದ್ರನ ಮೊಗದ ಸನ್ನೆಯಲಿ
ಹುಗ್ಗಿಗರ ಬಲುಹುರಿಯ ನಿಗುಚುವೆ
ನಿಗ್ಗುವೆನು ನಿಲ್ಲೆನುತ ಸೇನೆಯ
ನಗ್ಗಡಲೊಳಿಕ್ಕಿದನು ಫಲಗುಣನನಗಣಿತಾಸ್ತ್ರದಲಿ ೧೯

ವೀರರಿದಿರಹ ಹೊತ್ತು ರಣ ಮೈ
ಲಾರರಾದರು ಮರಳಿ ತೆಗೆವುತ
ಭೈರವನ ಸಾರೂಪ್ಯವಾದರು ಪೂತು ಮಝರೆನುತ
ಕೌರವನು ಕರ್ಣಾದಿಗಳ ನುಡಿ
ಯೋರೆ ಹದರಿನೊಳವಗಡಿಸಿ ಹೊಂ
ದೇರ ದುವ್ವಾಳಿಸುತ ಮೂದಲಿಸಿದನು ಫಲುಗುಣನ ೨೦

ಬಾಲ ವೃದ್ಧರ ವಿಪ್ರರನು ನೀ
ಕಾಳಗದೊಳೋಡಿಸಿದೆನೆಂದೇ
ಮೇಲು ಪೋಗಿನಲಿರಲು ಬೇಡೆಲೆ ಪಾರ್ಥ ಮರುಳಾದೈ
ಆಳಿದಡವಿಯ ರಾಜ್ಯವಲ್ಲದೆ
ಮೇಲೆ ಧರಣಿಯ ಬಯಸಿದೊಡೆ ನಿಮ
ಗಾಳಲೀವೆನೆ ಹೋಗು ಹೋಗಾರಣ್ಯಕೆನುತೆಚ್ಚ ೨೧

ಗಾರುಗೆಡೆಯದಿರೆಲವೊ ಸತ್ಯವ
ಮೀರಲಮ್ಮದೆ ಲೋಕ ನಿನ್ನನು
ದೂರ ಬೇಕೆಂದಡವಿಯೊಕ್ಕೆವು ಹೊಲ್ಲೆಯೇನಿದಕೆ
ಜಾರಿ ಹೋಯಿತ್ತವಧಿಯಿನ್ನೀ
ಮೀರಿ ಗಳಹುವ ನಿನ್ನ ಗಂಟಲ
ನೂರಿ ರಾಜ್ಯವ ತೆಗೆವೆ ಸೈರಿಸೆನುತ್ತ ನರನೆಚ್ಚ ೨೨

ಅರಿಯೆ ನೀನೆಲೆ ಮರುಳೆ ಗರುಡನ
ತರವಳಿಕೆಯಲಿ ಹಾವು ಕನ್ನವ
ಕೊರೆದು ಬದುಕುವುದೇ ವೃಥಾ ಕಕ್ಕುಲಿತೆ ನಿನಗೇಕೆ
ತರಿದು ತಿರಿಕಲ್ಲಾಡುವೆನು ನಿ
ಮ್ಮುರುವರೈವರ ಶಿರವನರ್ಜುನ
ಬರಿದೆ ಗಳಹದಿರೆನುತ ಕೌರವ ರಾಯ ತೆಗೆದೆಚ್ಚ ೨೩

ಗರುಡ ನೀನಹೆ ನಿನ್ನ ಪಕ್ಕವ
ಮುರಿದು ಹೆಡತಲೆಗಡರಿ ಬೆನ್ನೆಲು
ಮುರಿಯೆ ದುವ್ವಾಳಿಸುವ ಮುರರಿಪುವೆನ್ನ ನೀನರಿಯ
ತರಹರಿಸಿ ಕಲಿಯಾಗುಯೆಂದ
ಬ್ಬರಿಸಿ ಕೌರವನೆದೆಯನುಗುಳಿದ
ನೆರಡು ಬಾಣದೊಳರುಣ ಜಲದೊರತೆಗಳ ಕಾಣಿಸಿದ ೨೪

ನವ ನಿಕಾರಿಯ ವಲ್ಲಿ ಸೀರೆಗ
ಳವಯವದ ರಕುತದಲಿ ತೋದವು
ಜವವಳಿದು ಸಾರಥಿಗೆ ಸೂಚಿಸೆ ರಥವ ಮರಳಿಚಿದ
ಕವಿದನರ್ಜುನನೋಡದಿರು ಕೌ
ರವ ಪಲಾಯನವಕಟಕಟ ಪಾ
ರ್ಥಿವರ ಪಂಥವೆ ಮರಳಿ ನಿಂದಿರು ಕೊಲುವುದಿಲ್ಲೆಂದ ೨೫

ಮಾತು ಹಳಸದ ಮುನ್ನ ಕೈಗಳು
ಸೋತು ತೆಗೆದವೆ ಹೊಳ್ಳುವಾತಿದು
ನೀತಿಯೇ ನರಪತಿಗಳಿಗೆ ಬಹು ಭಂಗವನ್ವಯಕೆ
ಭೀತನಲ್ಲದೆ ಕಾದಿ ಮಡಿದನ
ಮಾತುಗಳಲಾ ಪುಣ್ಯಕಥನವು
ಭೂತಳಾಧಿಪ ಮರಳಿ ನೋಡೆನ್ನಾಣೆ ನೀನೆಂದ ೨೬

ಹುರುಳುಗೆಟ್ಟುದು ಗರುವತನವೆಂ
ದರಸ ನಾಚಿದನಧಿಕ ಶೌರ್ಯೋ
ತ್ಕರುಷೆಯಲಿ ಕಲಿಯಾಗಿ ನಿಂದನು ಮತ್ತೆ ಕಾಳಗಕೆ
ದೊರೆಯ ದುಗುಡವ ಕಂಡು ತಮ ತಮ
ಗುರವಣಿಸಿದರು ಸಕಲ ಸುಭಟರು
ಹೊರಳಿಗಟ್ಟಿತು ಸೇನೆ ನಿಚ್ಚಟರಳಿವ ನಿಶ್ಚಯಿಸಿ ೨೭

ನೊಂದನವನಿಪ ನಿಂದು ಪಾರ್ಥನ
ಕೊಂದು ತೋರುವೆನೆಂದು ರವಿಸುತ
ನೊಂದು ಕಡೆಯಲಿ ಮೊಳಗಿದನು ಬಲು ಬಿಲ್ಲ ಜೇವಡೆದು
ಒಂದು ಕಡೆಯಲಿ ಮಸಗಿದರು ಗುರು
ನಂದನನು ವೃಷಸೇನ ಸೈಂಧವ
ರೊಂದು ಕಡೆಯಲಿ ಭೀಷ್ಮ ಕೃಪ ದುಶ್ಶಾಸನಾದಿಗಳು ೨೮

ಗುರು ಚಡಾಳಿಸಿ ಹೊಕ್ಕನೊಮ್ಮಿಂ
ಗುರವಣಿಸಿದನು ಬಾಹ್ಲಿಕನು ಭಾ
ಸುರ ಕಳಿಂಗ ಸುಕೇತು ಭೂರಿಶ್ರವನು ದುಸ್ಸಹನು
ನರನ ಮುತ್ತಿದರೊಂದು ಕಡೆಯಲಿ
ತೆರಳಿಕೆಯ ತೇರಿನಲಿ ಬಲ ಮೋ
ಹರಿಸಿ ಕವಿದುದು ಸುತ್ತ ಮುತ್ತಿತು ಕಲಿ ಧನಂಜಯನ ೨೯

ಅಂಗವಿಸಿತರಿ ಸೇನೆ ಲೋಕವ
ನುಂಗಿ ಕುಣಿಯಲು ಬಗೆವ ಭರ್ಗನ
ರಂಗ ಭೂಮಿಯ ತೊಳೆವ ಜಲಧಿಯ ಜೋಕೆಯುಂದದಲಿ
ಭಂಗಿತರ ಮುರುವಲಗೆಯಲಿ ಸ
ರ್ವಾಂಗಬಲ ಜೋಡಿಸಿತು ನಮ್ಮಾಳಿ
ನಿಂಗೆ ಹದನೇನೆನುತ ಮತ್ಸ್ಯನ ಸೂನು ಚಿಂತಿಸಿದ ೩೦

ನೆರೆದ ತಿಮಿರದ ಥಟ್ಟು ಸೂರ್ಯನ
ತೆರಳಿಚುವವೊಲ್ ಮೇಘ ಘಟೆಗಳು
ಮುರಿದು ಮೋಹರವೌಕಿ ಪವನನ ಸೆರಗ ಹಿಡಿವಂತೆ
ತೆರಳೊದತ್ತಂದಬರಿಸಿ ಕುರುಬಲ
ವೊರಲಿ ಹೆಣನನು ತುಳಿದು ಮೇಲ
ಬ್ಬರಿಸಿ ಬರೆ ಸಮ್ಮೋಹನಾಸ್ತ್ರವ ಹೂಡಿದನು ಪಾರ್ಥ ೩೧

ಎಸಲು ಸಮ್ಮೋಹನದ ಶರ ಪಸ
ರಿಸಿತು ಬಲದಲಿ ಬಹಳ ನಿದ್ರಾ
ವ್ಯಸನ ವಿಹ್ವಲಿತಾಂತರಂಗರು ಮೈಯ್ಯನೊಲೆದೊಲೆದು
ಉಸುರ ಸಂಚದ ನಾಡಿಯುವಗಾ
ಹಿಸಲು ಕೊರೆದರು ಗುರುಕಿಡುತ ತಲೆ
ಮುಸುಕಿನಲಿ ನೆರೆ ತೆಕ್ಕೆಗೆಡೆದುದು ನಿಖಿಳ ಕುರುಸೇನೆ ೩೨

ತನುವನೊಲೆದವು ದಡದಡಿಸಿ ಕಿವಿ
ಗೊನೆಯ ಜೋಲಿಸಲಲ್ಲಿ ಮಡಿಗಾ
ಲಿನಲಿ ಕುಸಿದವು ಕೊರಳ ಮರಳಿಚಿ ಕೈಯ್ಯನೊಳಗಿಟ್ಟು
ತೊನೆದು ಕೆಡೆದವು ಜೋಧರಾಗಳು
ಕನಲಿ ಕೆಡೆದರು ಗುರು ನದೀಜರ
ಘನ ಬಲಂಗಳೊಳಯುತ ಕೋಟಿ ಗಜಂಗಳುರುಳಿದವು ೮೩

ದೃಗುಯುಗಳವರೆದೆರೆಯೆ ರೋಮಾ
ಳಿಗಳು ತೆಕ್ಕೆಯ ಸಾರೆ ಕೊರಳರೆ
ಮುಗುಳೆ ಹಿಂಗಾಲ್ಗೊಂಡು ಖುರವನು ತೂಗಿಯೊಲೆದೊಲೆದು
ಬಿಗುಹು ಸಹಿತವೆ ಹೊನ್ನ ಮರಗೋ
ಡುಗಳ ಮೇಲಡಗೆಡೆದು ನಿದ್ರಾ
ಮುಗುದರಾದರು ರಾವುತರು ತೂಕಡಿಸಿದವು ತುರಗ ೮೪

ಬಿಲು ಸೆಳೆಯೆ ಕೈದುಗಳು ಕೈಯಿಂ
ಚಲಿಸಲೊಬ್ಬರನೊಬ್ಬರತ್ತಲು
ಮಲಗಿ ಬೆಂಬತ್ತಳಿಕೆ ಬದಿಯೊಳಗಡಸಿ ತೋಳುಗಳ
ತಲೆಯೊಳಾನಿಸಿ ಗುರುಗುರಿಸಿ ರಥ
ದೊಳಗೆ ಸಾರಥಿವೆರಸಿ ನಿದ್ರಾ
ಕುಳರು ಜೊಮ್ಮಿನ ಮೇಲೆ ಮೈಮರೆದಿರ್ದರತಿರಥರು ೮೫

ಸರಳ ಸೊಕ್ಕವಗಡಿಸಿ ಸಲೆ ಮೈ
ಮರೆದನಿತ್ತಲು ದ್ರೋಣ ರಥದಲಿ
ಪರಮ ನಿದ್ರಾಗುಪ್ತನಾದನು ತನ್ನ ಮಗ ಸಹಿತ
ಕರದ ಬಿಲು ಶರ ಸರಿಯೆ ಕಂಗಳು
ಮುರಿಯೆ ಕರ್ಣನು ಕೆನ್ನೆಗೆದೆಯೊಳು
ದುರುಳ ದುರ್ಯೋಧನ ಸಹಿತ ಮೈಮರೆದುದರಿಸೇನೆ ೮೬

ಸೇನೆ ಮೈಮರೆದೊರಗಿದದಟ ನಿ
ಧಾನವೊಗೆದರುಹಿತ್ತು ನಿದ್ರಾ
ಮಾನ ವಿಭ್ರಮಿಸಿತ್ತು ಬಲು ಸಂಸಾರದಂದದಲಿ
ಏನ ಹೇಳುವೆನದನು ಕದನದ
ಕಾನನದೊಳತಿರಥರು ವಿಜಯ ವಿ
ಹೀನ ಬಲ ಸಮ್ಮೋಹನಾಸ್ತ್ರದ ಬಾಧೆಗೊಳಗಾಯ್ತು ೮೭

ಕನಸು ಮೋಹಿಪ್ಪರು ಸುಷುಪ್ತಿಗ
ಳೆನಿಪವಸ್ಥಾ ತ್ರಿತಯದಲಿ ಜೀ
ವನು ವಿಸಂಚಿಸಿ ಬೀಳ್ವನಲ್ಲದೆ ಶರಕೆ ಸಿಲುಕುವನೆ
ಇನಿತು ಬಲ ತೂಕಡಿಸಿ ರೋಮಾಂಚಿಸಿ
ತನಿಗೆಡೆಯೆ ಭಾಗೀರಥೀ ನಂ
ದನನು ನಿರ್ಮಲನಾಗಿ ತೊಳ ತೊಳಗಿದನು ರಥದೊಳಗೆ ೮೮

ಎಣಿಸುವರೆ ಏಕಾದಶಾಕ್ಷೋ
ಹಿಣಿಯ ಬಲವನು ಪಾರ್ಥನೊಬ್ಬನೆ
ರಣದೊಳಡಗೆಡಹಿದನು ಮೋಹನ ಮಂತ್ರಬಾಣದಲಿ
ಕುಣಿದು ಕುಸುಮದ ಸರಿವುಗಳ ಸಂ
ದಣಿಯನಮರರು ಸೂಸಿದರು ಫಲು
ಗುಣನು ರಥವನು ನೂಕಿದನು ನಿಜ ಮಹಿಪರಿದ್ದೆಡೆಗೆ ೮೯

ಇಳಿದು ದ್ರೋಣನ ಚರಣ ಕಮಲಂ
ಗಳಿಗೆ ತನ್ನಯ ನೊಸಲ ಚಾಚಿದ
ನಳವಿಯಲಿ ಭೀಷ್ಮಂಗೆ ಮೈಯಿಕ್ಕಿದನು ರಥದೊಳಗೆ
ಸುಲಿದು ಕರ್ಣನ ಮಕುಟ ಪಟ್ಟೆಯ
ಸೆಳೆದು ದುರ್ಯೋಧನನ ವಸ್ತ್ರಾವ
ಸುಲಲಿತಾಭರಣವನು ನೀ ತೆಗೆಯೆಂದನುತ್ತರಗೆ ೯೦

ಧರಣಿಪಾಲರ ಮಕುಟವನು ಕ
ತ್ತರಿಸಿ ದುಶ್ಶಾಸನನ ಘನ ಶಿರ
ವರದ ರತ್ನವನುಡಿದು ಭೂರಿಶ್ರವ ಜಯದ್ರಥರ
ಹೊರಳಿಚಿದನು ವಿಶೋಕ ಕುವರರ
ಹುರುಳುಗೆಡಿಸಿದನಖಿಳ ರಾಯರ
ಶಿರಕೆ ಭಂಗವ ಹೊರಿಸಿ ಫಲುಗುಣನಡರಿದನು ರಥವ ೯೧

ಫಲುಗುಣನ ನೇಮದಲಿ ರಥದಿಂ
ದಿಳಿದನುತ್ತರನವನಿಪನ ಕೋ
ಮಲ ಸುವಸ್ತ್ರಾಭರಣ ಕರ್ಣನ ಕೃಪನ ಗುರುಸುತನ
ಸುಲಲಿತಾಂಬರ ರತ್ನಭೂಷಣ
ಗಳನು ಕೊಂಡಡರಿದನು ರಥವನು
ಬಿಲುದುಡುಕಿ ಗಾಂಗೇಯನಡ ಹಾಯ್ದನು ಧನಂಜಯನ ೯೨

ಎರಡು ಶರದಲಿ ಚಾಪವನು ಕ
ತ್ತರಿಸಿ ಭೀಷ್ಮನ ನಿಲಿಸಿ ಕೌರವ
ಧರಣಿಪಾಲನ ಮಕುಟವನು ಮೂರಂಬಿನಲಿ ಕಡಿದು
ತಿರುಗಿದನು ಕಲಿಪಾರ್ಥ ನಗುತು
ತ್ತರ ಸಹಿತ ಬನ್ನಿಯಲಿ ಕೈದುವ
ನಿರಿಸಿ ಮುನ್ನಿನ ಹುಲುರಥದಿ ನಿಜನಗರಿಗೈತಂದ ೯೩

ಒಂಬತ್ತನೆಯ ಸಂಧಿ

ಸೂ. ರಾಯ ಕೌರವ ಸೈನ್ಯ ಕದಳೀ
ವಾಯುವುತ್ತರ ಸಹಿತ ನಿಜಪರ
ರಾಯ ನಂದನ ಬಂದು ಹೊಕ್ಕನು ಮತ್ಸ್ಯಪುರವರವ

ಕೇಳು ಜನಮೇಜಯ ಧರಿತ್ರೀ
ಪಾಲ ಭಂಗದಲಖಿಳ ಕೌರವ
ಜಾಲ ತಿರುಗಿತು ದುಗುಡದಲಿ ಗಜಪುರಕೆ ನಡೆತಂದು
ಮೇಲು ಮುಸುಕಿನ ಮೊಗದ ವಾದ್ಯದ
ಮೇಳ ಮೋನದಲಖಿಳ ನೃಪರು ನಿ
ಜಾಲಯಂಗಳ ಬಂದು ಹೊಕ್ಕರು ಹೊತ್ತ ದುಗುಡದಲಿ ೧

ಬಳಿಕ ಫಲುಗುಣನತ್ತಲಾ ಮರ
ದೊಳಗೆ ಕೈದುವನಿರಿಸಿ ಮುನ್ನಿನ
ಹುಲು ರಥವ ಮೇಳೈಸಿ ಸಾರಥಿತನವನಳವಡಿಸೆ
ಇಳಿದು ಪಾರ್ಥನ ಮೈದಡವಿ ಕಪಿ
ಕುಲಲಲಾಮನು ವನಕೆ ಹಾಯ್ದನು
ಹೊಳಲ ಹೊರೆಯಲಿ ನಿಂದು ನಗುತುತ್ತರನೊಳಿಂತೆಂದ ೨

ಕರೆದು ದೂತರಿಗರುಹು ನೀನೇ
ಧುರವ ಜಯಿಸಿದೆನೆನ್ನು ನಾವಿ
ದ್ದಿರವನರುಹದಿರಿಂದು ಪಸರಿಸು ನಿನ್ನ ವಿಕ್ರಮವ
ಅರಸ ನಿನ್ನನೆ ಮನ್ನಿಸಲಿ ಪುರ
ಪರಿಜನಂಗಳು ನಿನ್ನ ವಿಜಯದ
ಹರುಷದಲಿ ಹೆಚ್ಚಿರಲಿ ನೇಮಿಸಿದಂತೆ ಮಾಡೆಂದ ೩

ಎನಲು ನೀನೇ ಬಲ್ಲೆ ಕರ ಲೇ
ಸೆನುತ ದೂತರ ಕರೆದು ಮತ್ಸ್ಯನ
ತನಯ ಕೌರವ ಬಲವ ಜಯಿಸಿದನೆಂದು ಪೇಳುವುದು
ಜನಕನಲ್ಲಿಗೆ ಪೋಗಿಯೆಂದಾ
ತನು ನಿಯಾಮಿಸುತಿರ್ದನತ್ತಲು
ಜನಪ ಕುಂತೀಸುತನು ಸಹಿತೈತಂದನರಮನೆಗೆ ೪

ಅರಮನೆಯ ಹೊಕ್ಕವನಿಪತಿಯು
ತ್ತರನ ಕಾಣದೆ ಕಂದನೆತ್ತಲು
ಸರಿದನೆನೆ ರಾಣಿಯರು ಬಿನ್ನವಿಸಿದರು ಭೂಪತಿಗೆ
ಕುರು ಬಲವನಂಗೈಸೆ ಮಿಗೆಯು
ತ್ತರೆಯ ಗುರು ಸಾರಥಿತನವನನು
ಕರಿಸಿದನು ಕೆಲಬಲನ ಹಾರದೆ ಕದನಕೈದಿದನು ೫

ಎಂದರೊಡಲೊಳು ಕೂರಲಗು ಮುರಿ
ದಂದದಲಿ ಕಳವಳಿಸಿದನು ಮನ
ನೊಂದನಕಟ ಕುಮಾರನೆತ್ತಲು ರಾಯ ದಳವೆತ್ತ
ಬಂದವರು ಭೀಷ್ಮಾದಿಗಳು ತಾ
ನಿಂದು ತರಹರಿಸುವೊಡೆ ತಾನೇ
ನಿಂದುಧರನೇ ಮರುಳಲಾ ಮಗನೆನುತ ಚಿಂತಿಸಿದ ೬

ಮಗಗೆ ಪಡಿಬಲವಾಗಿ ಬಲು ಮಂ
ತ್ರಿಗಳನವನಿಪ ಬೀಳುಗೊಟ್ಟನು
ದುಗುಡದಿಂದಿರೆ ಹೊಳಲ ಕೈಸೂರೆಗಳ ಕಳಕಳದ
ಮೊಗದ ಹರುಷದಲಖಿಳ ದೂತಾ
ಳಿಗಳು ಬಂದುದು ಗುಡಿಯ ಕಟ್ಟಿಸು
ನಗರಿಯಲಿ ಕಳುಹಿದಿರುಗೊಳಿಸು ಕುಮಾರಕನನೆನುತ ೭

ರಾಯ ಕುವರ ಪಿತಾಮಹನು ರಿಪು
ರಾಯ ಕುವರ ಕುಠಾರ ಕೌರವ
ರಾಯ ಘಟ್ಟು ವಿಭಾಡ ಕುರುಕುಲ ಗಜಕೆ ಪಂಚಾಸ್ಯ
ಜೀಯ ಬಿನ್ನಹ ಕರ್ಣ ಗುರು ಗಾಂ
ಗೇಯ ಮೊದಲಾದಖಿಳ ಕೌರವ
ರಾಯ ದಳವನು ಗೆಲಿದು ಉತ್ತರ ತುರುವ ಮರಳಿಚಿದ ೮

ಕೇಳಿ ಮಿಗೆ ಹಿಗ್ಗಿದನು ತನು ಪುಳ
ಕಾಳಿ ತಳಿತುದು ಬಹಳ ಹರುಷದ
ದಾಳಿಯಲಿ ಮನ ಮುಂದುಗೆಟ್ಟುದು ಕಂಗಳರಳಿದವು
ಲಾಲಿಸುತ ಸರ್ವಾಂಗ ಹರುಷದೊ
ಳಾಳೆ ಜನಪ ಪಸಾಯಿತವ ದೂ
ತಾಳಿಗಿತ್ತನು ಸುಲಿದರವದಿರು ರಾಯನೋಲಗವ ೯

ಇದಿರುಗೊಳ ಹೇಳೆನಲು ಸರ್ವಾಂ
ಗದಲಿ ಮಣಿ ಮೌಕ್ತಿಕದ ಸಿಂಗಾ
ರದ ಸುರೇಖೆಯ ಲಲಿತ ಚಿತ್ರಾವಳಿಯ ಮುಸುಕುಗಳ
ಸುದತಿಯರು ಹೊರವಂಟರೊಗ್ಗಿನ
ಮೃದು ಮೃದಂಗದ ಕಹಳೆಗಳು ಸಂ
ಪದದ ಸೊಂಪಿನಲೆಸೆಯೆ ರಾಜಾಂಗನೆಯರನುವಾಯ್ತು ೧೦

ಕವಿದು ನೂಕುವ ಹರುಷವನು ಸಂ
ತವಿಸಲರಿಯೆನು ಕಂಕ ನಿನ್ನೊಡ
ನೆವಗೆ ವಿಮಳ ದ್ಯೂತಕೇಳಿಗೆ ಚಿತ್ತವಾಯ್ತೆನಲು
ಅವನಿಪತಿ ಕೇಳ್ ಜೂಜಿನಲಿ ಪಾಂ
ಡವರು ಸಿಲುಕಿದರವರ ವಿಧಿಯನು
ಭುವನದಲಿ ಬಲ್ಲವರದಾರೆಂದನು ವಿರಾಟಂಗೆ ೧೧

ಅವರು ರಾಜ್ಯವನೊಡ್ಡಿ ಸೋತವೊ
ಲೆವಗೆ ಪಣ ಬೇರಿಲ್ಲ ಹರ್ಷೋ
ತ್ಸವ ಕುಮಾರಾಭ್ಯುದಯ ವಿಜಯಶ್ರವಣ ಸುಖ ಮಿಗಲು
ಎವಗೆ ಮನವಾಯ್ತೊಡ್ಡು ಸಾರಿಯ
ನಿವಹವನು ಹೂಡೆನಲು ಹೂಡಿದ
ನವನಿಪತಿ ನಸುನಗುತ ಹಾಸಂಗಿಯನು ಹಾಯ್ಕಿದನು ೧೨

ಕೇಳಿ ಸಮತಳಿಸಿತ್ತು ಮತ್ಸ್ಯ ನೃ
ಪಾಲನೆಂದನು ಕಂಕ ನೋಡೈ
ಕಾಳಗವನುತ್ತರನು ಗೆಲಿದನು ರಾಯ ಘಟ್ಟನಲಿ
ಶೂಲಪಾಣಿಗೆ ಸೆಡೆಯದಹಿತ ಭ
ಟಾಳಿ ಸೋತುದು ದಿವಿಜ ನರರೊಳು
ಹೋಲುವವರುಂಟೇ ಕುಮಾರನನೇನ ಹೇಳೆಂದ ೧೩

ಸೋತುದುಂಟರಿ ಸೇನೆ ಸುರಭಿ
ವ್ರಾತ ಮರಳಿದುದುಂಟು ಗೆಲವಿದು
ಕೌತುಕವಲೇ ಬಗೆಯಲದ್ಭುತವೆಮ್ಮ ಚಿತ್ತದಲಿ
ಮಾತು ಹೋಲುವೆಯಹುದು ಜಗ ವಿ
ಖ್ಯಾತ ಸಾರಥಿಯಿರೆ ಕುಮಾರಗೆ
ಭೀತಿ ಬಳಿಕೆಲ್ಲಿಯದು ತಪ್ಪೇನೆಂದನಾ ಕಂಕ ೧೪

ಎಲೆ ಮರುಳೆ ಸನ್ಯಾಸಿ ಮತ್ಸರ
ದೊಳಗೆ ಮುಳುಗಿದ ಚಿತ್ತ ನಿನ್ನದು
ಗೆಲವಿನಲಿ ಸಂದೇಹವೇ ಹೇಳಾವುದದ್ಭುತವು
ಅಳುಕುವನೆ ಸುಕುಮಾರ ಸಾರಥಿ
ಬಲುಹನುಳ್ಳವನೇ ನಪುಂಸಕ
ನಲಿ ನಿರಂತರ ಪಕ್ಷವೆಂದು ವಿರಾಟ ಖತಿಗೊಂಡ ೧೫

ನಾರಿಯರ ಮೃಗುರುಹು ಪುರುಷರ
ಚಾರು ಚಿಹ್ನವ ಕೂಡಿಕೊಂಡಿಹ
ಸಾರಥಿಯ ದೆಸೆಯಿಂದ ಕುವರನು ಗೆಲಿದನೆಂಬುದನು
ಸೈರಿಸಿದೆ ನಾನಿನ್ನವರೆ ಮ
ತ್ತಾರೊಡನೆ ಮಾತಾಡದಿರು ನಿ
ಸ್ಸಾರ ಹೃದಯನು ಕಂಕ ನೀ ದುಷ್ಟಾತ್ಮ ಹೋಗೆಂದ ೧೬

ಖತಿಯ ಹಿಡಿಯದಿರರಸ ದಿಟ ನೀ
ನತಿಶಯುವ ಬಯಸುವರೆ ಜನ ಸ
ಮ್ಮತವು ಸಾರಥಿ ಗೆಲಿದನೆಂದೇ ಹೊಯಿಸು ಡಂಗುರವ
ಸುತನು ಸಾರಥಿಯೆಂದು ಸಾರಿಸು
ವಿತಥವಲ್ಲಿದು ಪಕ್ಷಪಾತ
ಸ್ಥಿತಿಯನಾಡೆವು ಕವಲು ನಾಲಗೆಯಿಲ್ಲ ತನಗೆಂದ ೧೭

ನಿನ್ನ ಮೋಹದ ಕಂಗಳಿಗೆ ಮಗ
ನುನ್ನತೋನ್ನತ ಸತ್ವನೆಂದೇ
ಮುನ್ನ ತೋರಿತು ಹೊಲ್ಲಹವೆ ಸಂಸಾರಕ ಭ್ರಮೆಗೆ
ಇನ್ನು ಗೆಲಿದವನಾ ಬೃಹನ್ನಳೆ
ನಿನ್ನ ಮಗಗಳುಕುವರೆ ಭೀಷ್ಮನು
ಕರ್ಣ ಕೃಪ ಗುರು ಗುರುತನೂಭವರೆಂದನಾ ಕಂಕ ೧೮

ಎನಲು ಖತಿ ಜಿಗುಡೇರಿ ಹಲು ಹಲು
ಡಿಸುತೆ ಕಂಗಳಲುರಿಯನುಗುಳುತ
ಕನಲಿ ಜಗದೊಡೊತ್ತಿ ಕನಕದ ಸಾರಿಯನು ನೆಗಹಿ
ಜನಪತಿಯು ಹಣೆಯೊಡೆಯಲಿಡೆ ಜಾ
ಜಿನ ಗಿರಿಯ ನಿರ್ಜರದವೊಲು ಭೋಂ
ಕನಲು ರುಧಿರದ ಧಾರೆ ಸಿಡಿದುದು ಶಿರದ ಸೆಳೆಯೊಡೆದು ೧೯

ಸೈರಿಸುತ ಕೈಯೊಡ್ಡಿ ರಕುತದ
ಧಾರೆಯನು ಕೈತುಂಬ ಹಿಡಿದತಿ
ಧೀರನೋರೆಯ ನೋಟದಲಿ ಸೈರಂಧ್ರಿಯನು ಕರೆಯೆ
ನಾರಿ ಹರಿತಂದಕಟ ನೊಂದನು
ಕಾರುಣಿಕ ಸನ್ಯಾಸಿಯೆನುತ ವಿ
ಕಾರಿಸದೆ ಸೆರಗಿನಲಿ ತೋದಳು ಬಹಳ ಶೋಣಿತವ ೨೦

ಮಡದಿ ಕರಪಲ್ಲವದಲೊರೆಸಿದ
ಳಡಿಗಡಿಗೆ ಹಣೆಯನು ಕಪೋಲವ
ತೊಡೆದು ತೊಳೆದಳು ಮುಖವನದನವ ಕಂಡು ಬೆರಗಾಗಿ
ಹಿಡಿದೆ ರಕುತವನೇಕೆ ಕಾಮಿನಿ
ನುಡಿ ನಿಧಾನವನಿವರು ನೊಂದರೆ
ಮಿಡುಕಲೇತಕೆ ನೀನೆನುತ ದುರುಪದಿಯ ಬೆಸಗೊಂಡ ೨೧

ಉರಿದು ಪೋಹುದು ನಿನ್ನ ರಾಜ್ಯದ
ಸಿರಿಯ ಬದುಕಿದೆಯೊಂದು ಕಣೆಯಕೆ
ಪರಮ ಯತಿ ಕಾಯಿದನು ಕೈಯಲಿ ತುಂಬಿ ಶೋಣಿತವ
ಅರಸ ಕೇಳೀ ಮುನಿಯ ನೆತ್ತರು
ಧರೆಯೊಳೊಕ್ಕೊಡೆಯಾ ಪ್ರದೇಶವ
ನೊರಸಿ ಕಳೆವುದು ದಿಟ ಬೃಹನ್ನಳೆಗೇರಿಸಿದ ಬಿರುದು ೨೨

ಈಕೆ ಯಾರಿವರಾರು ನಾಟ್ಯ
ವ್ಯಾಕರಣ ಪಂಡಿತ ಬೃಹನ್ನಳೆ
ಯಿಾಕೆಗೇನಹನರಿಯ ಬಾರದು ಕಾಲು ಕೀಲುಗಳ
ಏಕೆ ನನಗದರರಿತವೆಂದವಿ
ವೇಕಿಯಿರೆ ಬಳಿಕಿತ್ತ ಪುರದಲಿ
ನೂಕು ನೂಕಾಯಿತ್ತು ನೋಡುವ ನೆರವಿಯುತ್ತರನ ೨೩

ಇದಿರು ಬಂದರು ಮಂತ್ರಿಗಳು ವರ
ಸುದತಿಯರು ಸೂಸಿದರು ಸೇಸೆಯ
ನುದಿತ ಮಂಗಳ ಘೋಷ ವಾದ್ಯ ವಿತಾನ ರಭಸದಲಿ
ವದನವಿದೆ ಕಳೆಗುಂದಿ ಜಯದ
ಭ್ಯುದಯ ತಾನೆಂತೆನುತ ವರ ಕೋ
ವಿದರು ತಮ್ಮೊಳಗಾಡುತಿರ್ದರು ಕೂಡೆ ಗುಜುಗುಜಿಸಿ ೨೪

ಎಂದಿನವನುತ್ತರನು ಗಂಗಾ
ನಂದನನೀ ಹೂಹೆ ಗೆಲಿದನು
ಸಂದ ಸುಭಟ ದ್ರೋಣ ಕರ್ಣಾದಿಗಳನೋಡಿಸಿದ
ಎಂದು ಕೆಲಬರು ಕೆಲಬರಿವ ಗೆಲಿ
ದಂದವಾಗಿರದೀ ಬೃಹನ್ನಳೆ
ಯಿಂದ ಸಂಭಾವಿಸುವುದೆಂದುದು ಮಂದಿ ತಮತಮಗೆ ೨೫

ಲೀಲೆ ಮಿಗಲುತ್ತರನು ಪುರಜನ
ಜಾಲ ಜೀಯೆನಲಿದಿರು ಬಂದ ನಿ
ವಾಳಿಗಳ ನೂಕಿದನು ಕೈವಾರಿಗಳ ಕೋಪಿಸುತ
ಆಲಿಯವನಿಯ ಬರೆಯೆ ಮುಸುಕಿನ
ಮೇಲು ದುಗುಡದ ಭಾರದಲಿ ರಾ
ಜಾಲಯಕೆ ಬರಲಿದಿರು ಬಂದಪ್ಪಿದನು ನಂದನನ ೨೬

ಬಾ ಮಗನೆ ವಸುಕುಲದ ನೃಪ ಚಿಂ
ತಾಮಣಿಯೆ ಕುರುರಾಯ ಮೋಹರ
ಧೂಮಕೇತುವೆ ಕಂದ ಬಾಯೆಂದಪ್ಪಿ ಕುಳ್ಳಿರಿಸೆ
ಕಾಮಿನಿಯರುಪ್ಪಾರತಿಗಳಭಿ
ರಾಮ ವಸ್ತ್ರ ನಿವಾಳಿ ರತ್ನ
ಸ್ತೋಮ ಬಣ್ಣದ ಸೊಡರು ಸುಳಿದವು ಹರುಷದೊಗ್ಗಿನಲಿ ೨೭

ಬೊಪ್ಪ ಸಾಕೀ ಬಯಲ ಡೊಂಬೆನ
ಗೊಪ್ಪುವುದೆ ವೀರೋಪಚಾರವಿ
ದೊಪ್ಪುವರಿಗೊಪ್ಪುವುದು ತೆಗೆಸೆನಲರಸ ನಸುನಗುತ
ದರ್ಪವುಳ್ಳಂಗೀಸು ಮಂಗಳ
ವೊಪ್ಪದೇನೈ ಜಗದೊಳಾವಂ
ಗಪ್ಪುದೀ ಬಲವೀ ನಿಗರ್ವಿತೆಯೆಂದನಾ ಮತ್ಸ್ಯ ೨೮

ಮಗನೆ ಕರ್ಣ ದ್ರೋಣ ಭೀಷ್ಮಾ
ದಿಗಳನೊಬ್ಬನೆ ಗೆಲಿದೆಯಾ ಕಾ
ಳಗದ ಕಡುಗಲಿತನಗಳುಂಟೇ ಪೂರ್ವ ಪುರುಷರಲಿ
ದುಗುಡವೇಕೆನ್ನಾಣೆ ಹೆತ್ತರ
ಮೊಗಕೆ ಹರುಷವ ತಂದೆಲಾ ಹಂ
ಗಿಗನೆ ನೀ ತಲೆ ಗುತ್ತಲೇಕೆಂದೆತ್ತಿದನು ಮುಖವ ೨೯

ಕಾದಿ ಗೆಲಿದವ ಬೇರೆ ಸಾರಥಿ
ಯಾದ ತನಗೀಸೇಕೆ ನಿಮ್ಮಡಿ
ಯಾದರಿಸಲೊಡೆಮುರಿಚ ಬಲ್ಲನೆ ನಾಚಿಸದಿರೆನಲು
ಕಾದಿದಾತನು ನೀನು ಸಾರಥಿ
ಯಾದವನು ತಂಗಿಯ ಬೃಹನ್ನಳೆ
ವಾದ ಬೇಡಲೆ ಮಗನೆ ಬಲ್ಲೆನು ನಿನ್ನ ವಿಕ್ರಮವ ೩೦

ಅದಟುತನವೆನಗುಂಟೆ ಬೆಂದುದ
ಬೆದಕಿ ನೋಯಿಸಬೇಡ ಹಗಲಿನ
ಕದನವನು ಗೆಲಿದಾತ ಬೇರಿಹ ಬೊಪ್ಪ ನುಡಿಯದಿರು
ಉದಯದಲಿ ಗೆಲಿದಾತನನು ನಿ
ಮ್ಮಿದಿರಿನಲಿ ತೋರುವೆನು ಬೀಳ್ಕೊಡಿ
ಸದನಕೆಂದು ಕುಮಾರ ಕಳುಹಿಸಿಕೊಂಡನರಮನೆಗೆ ೩೧

ಇತ್ತಲರ್ಜುನ ದೇವ ಸಾರಿದ
ನುತ್ತರೆಯ ಭವನವನು ತಾ ತಂ
ದುತ್ತಮಾಂಬರ ವಿವಿಧ ರತ್ನಾಭರಣ ವಸ್ತುಗಳ
ಇತ್ತನಾ ಕನ್ನಿಕೆಗೆ ಮುದ ಮಿಗ
ಲುತ್ತರೆಯ ಮನೆಯಿಂದ ಶಶಿಕುಲ
ಮತ್ತವಾರಣ ಬಂದನಾ ಭೀಮಾಗ್ರಜನ ಹೊರೆಗೆ ೩೨

ಬಳಿಕ ಸಂಕೇತದಲಿ ಭೂಪನ
ನಿಳಯವನು ಕಲಿಭೀಮ ಹೊಕ್ಕನು
ನಳಿನಮುಖಿ ಸಹದೇವ ನಕುಲರು ಬಂದರಾ ಕ್ಷಣಕೆ
ಫಲುಗುಣನು ಹೊಡವಂಟನಿಬ್ಬರಿ
ಗುಳಿದವರು ಪಾರ್ಥಂಗೆ ವಂದಿಸ
ಲೊಲಿದು ಬಿಗಿಯಪ್ಪಿದನು ಪರಿತೋಷದಲಿ ಸಮಬಲರ ೩೩

ಉಳಿದ ನಾಲ್ವರು ಕಲಿ ತ್ರಿಗರ್ತರ
ಗೆಲಿದ ಪರಿಯನು ಪಾರ್ಥ ಕೌರವ
ಬಲವ ಭಂಗಕೆ ತಂದ ಪರಿಯನು ಹೇಳುತಿರುತಿರಲು
ನಿಲುಕಿ ರಾಯನ ಹಣೆಯ ಗಾಯವ
ಬಳಿಕ ಕಂಡನಿದೇನು ನೊಸಲಿಂ
ದಿಳಿವುತಿದೆ ನಸು ರಕ್ತಬಿಂದುಗಳೆಂದನಾ ಪಾರ್ಥ ೩೪

ಅನವಧಾನದೊಳಾಯ್ತು ಸಾಕದ
ನೆನೆಯಲೇತಕೆ ಮಾಣೆನಲು ಮಿಗೆ
ಕನಲುತರ್ಜುನನರಿದನಾ ದ್ರೌಪದಿಯ ಸೂರುಳಿಸಿ
ಮನದಲುರಿದೆದ್ದನು ವಿರಾಟನ
ತನುವ ಹೊಳ್ಳಿಸಿ ರಕುತವನು ಶಾ
ಕಿನಿಯರಿಗೆ ಹೊಯಿಸುವೆನು ಹೊಲ್ಲೆಹವೇನು ಹೇಳೆಂದ ೩೫

ಕಳುಹಬೇಕೇ ಕೀಚಕೇಂದ್ರನ
ಬಳಗವಿದ್ದಲ್ಲಿಗೆ ವಿರಾಟನ
ತಲೆಯ ಋಣ ಸಾಲಿಗನಲೇ ಶಿವ ಶಿವ ಮಹಾದೇವ
ನೆಲದೊಳೊಕ್ಕುದೆ ರಕ್ತವವದಿರ
ಕುಲವ ಸವರುವೆನಿವನ ಸೀಳಿದು
ಬಲಿಯ ಕೊಡುವೆನು ಭೂತಗಣಕೆನುತೆದ್ದನಾ ಭೀಮ ೩೬

ಕಾಕ ಬಳಸಲು ಬೇಡ ಹೋ ಹೋ
ಸಾಕು ಸಾಕೈ ತಮ್ಮ ಮಾಣು
ದ್ರೇಕವನು ನೆಲ ರಕ್ತ ಕಂಡರೆ ನನ್ನ ಮೇಲಾಣೆ
ಈ ಕಮಲಲೋಚನೆಯ ಸೆರಗಿಗೆ
ಸೇಕವಾಯಿತು ರಕುತವತಿ ಸ
ವ್ಯಾಕುಲತೆ ಬೇಡೆಂದು ಗಲ್ಲವ ಹಿಡಿದನನಿಲಜನ ೩೭

ಕೊಂಬೆನಾತನ ಜೀವವನು ಪತಿ
ಯೆಂಬ ಗರ್ವವನವನ ನೆತ್ತಿಯ
ತುಂಬಿ ಬಿಡಲೆರಗುವೆನು ತರಿವೆನು ಮತ್ಸ್ಯಸಂತತಿಯ
ಅಂಬುಜಾಕ್ಷಿಯ ಕೀಚಕನ ಬೇ
ಳಂಬವೀತನ ಕೂಟ ಭೂತ ಕ
ದಂಬ ತುಷ್ಟಿಯ ಮಾಡಬೇಹುದು ಸೆರಗ ಬಿಡಿಯೆಂದ ೩೮

ಇವನ ನಾವೋಲೈಸಿ ಕೈಯೊಡ
ನಿವಗೆ ಮುನಿದೊಡೆಯೇನನೆಂಬುದು
ಭುವನ ಜನವು ಭ್ರಮಿಸದಿರು ಸ್ಥೈರಣೆಗೆ ಮನ ಮಾಡು
ಎವಗೆ ನೋವಿನ ಹೊತ್ತು ದುಷ್ಕೃತ
ವಿವರಣದ ಫಲವಿದಕೆ ಲೋಗರ
ನವಗಡಿಸಿದೊಡೆ ಹಾನಿಯೆಮಗೆನೆ ಭೀಮನಿಂತೆಂದ ೩೯

ಬರಿಯ ಧರ್ಮದ ಜಾಡ್ಯದಲಿ ವೈ
ಮರೆದು ವನದಲಿ ಬೇವು ಬಿಕ್ಕೆಯ
ನರಸಿ ತೊಳಲಿದು ಸಾಲದೇ ಹದಿಮೂರು ವತ್ಸರದಿ
ಉರುಕುಗೊಂಡೊಡೆ ರಾಜ ತೇಜವ
ಮೆರೆವ ದಿನವೆಂದಿಹುದು ನೀವಿ
ನ್ನರಿಯಿರೆಮ್ಮನು ಹರಿಯ ಬಿಡಿ ಸಾಕೆಂದನಾ ಭೀಮ ೪೦

ಉದಯದಲಿ ನಾವಿನಿಬರಾತನ
ಸದನದಲಿ ನೃಪಪೀಠವನು ಗ
ರ್ವದಲಿ ನೆಮ್ಮುವೆವಾತ ನಮ್ಮಲಿ ಖೋಡಿಯನು ಹಿಡಿಯೆ
ಮದಮುಖಿನನೊರಸುವೆವು ಹರುಷದ
ಲಿದಿರುಗೊಂಡೊಡೆ ಮನ್ನಿಸುವ ಮಾ
ತಿದುವೆ ಸನ್ಮತವೆಂದು ಸಂತೈಸಿದನು ಪವನಜನ ೪೧

ಹತ್ತನೆಯ ಸಂಧಿ

ಸೂ. ರಾಯ ಪಾಂಡವ ಜೀವ ಭಕ್ತನಿ
ಕಾಯ ಲಂಪಟನಮಲ ಯಾದವ
ರಾಯ ಬಿಜಯಂಗೈದನಭಿಮನ್ಯುವಿನ ಪರಿಣಯಕೆ

ಕೇಳು ಜನಮೇಜಯ ಧರಿತ್ರೀ
ಪಾಲ ಚರಿತಜ್ಞಾತವಾಸವ
ಬೀಳುಕೊಟ್ಟರು ಬಹಳ ಹರುಷದಲಿರುಳ ನೂಕಿದರು
ಮೇಲಣವರಭ್ಯುದಯವನು ಕೈ
ಮೇಳವಿಸಿ ಕೊಡುವಂತೆ ಮೂಡಣ
ಶೈಲ ಮುಖದಲಿ ಕೆಂಪು ಸುಳಿದುದು ಭಾನುಮಂಡಲದ ೧

ಏಳು ಕುದುರೆಯ ಖುರಪುಟದ ಕೆಂ
ದೂಳಿಯೋ ಕುಂತೀ ಕುಮಾರಕ
ರೇಳಿಗೆಯ ತನಿರಾಗರಸವುಬ್ಬರಿಸಿ ಪಸರಿಸಿತೊ
ಹೇಳಲೇನು ಮಹೇಂದ್ರ ವರ ದಿ
ಗ್ಪಾಲಕಿಯ ಬೈತಲೆಯ ಕುಂಕುಮ
ಜಾಲವೋ ಹೇಳೆನಲು ದಿನಪನ ಚೂಣಿ ರಂಜಿಸಿತು ೨

ಸರಸಿಜದ ಪರಿಮಳಕೆ ತುಂಬಿಯ
ಬರವ ಕೊಟ್ಟನು ಚಂದ್ರಕಾಂತಕೆ
ಬೆರಗನಿತ್ತನು ಜಕ್ಕವಕ್ಕಿಯ ಸೆರೆಯ ಬಿಡಿಸಿದನು
ಕೆರಳಿ ನೈದಿಲ ಸಿರಿಯ ಸೂರೆಯ
ತರಿಸಿದನು ರಿಪುರಾಯ ರಾಜ್ಯವ
ನೊರಸಿದನು ರವಿ ಮೂಡಣಾದ್ರಿಯೊಳಿತ್ತನೋಲಗವ ೩

ಹರ ಹರ ಶ್ರೀಕಾಂತನೆನುತೈ
ವರು ಕುಮಾರಕರುಪ್ಪವಡಿಸಿದ
ರರಿ ವಿದಾರರು ಮಾಡಿದರು ಮಾಂಗಲ್ಯ ಮಜ್ಜನವ
ವರ ವಿಭೂಷಣ ಗಂಧ ಮಾಲ್ಯಾಂ
ಬರದಿ ಪರಿವೃತರಾದರವನೀ
ಸುರರಿಗಿತ್ತರು ಧೇನು ಮಣಿ ಕನಕಾದಿ ವಸ್ತುಗಳ ೪

ತಮದ ಗಂಟಲನೊಡೆದ ಹರುಷ
ದ್ಯುಮಣಿ ಮಂಡಲದಂತೆ ಜೀವ
ಭ್ರಮೆಯ ಕವಚವ ಕಳೆದು ಹೊಳೆ ಹೊಳೆವಾತ್ಮನಂದದಲಿ
ವಿಮಲ ಬಹಳ ಕ್ಷತ್ರ ರಶ್ಮಿಗ
ಳಮರಿ ದೆಸೆಗಳ ಬೆಳಗೆ ರಾಜೋ
ತ್ತಮ ಯುಧಿಷ್ಠಿರ ದೇವನೆಸೆದನು ರಾಜ ತೇಜದಲಿ ೫

ಪರಮ ಸತ್ಯವ್ರತ ಮಹಾಕ್ರತು
ವರದಲವಭೃತ ಮಜ್ಜನವ ವಿ
ಸ್ತರಿಸಿ ಭೀಮಾದಿಗಳು ಸಹಿತ ವಿರಾಟನರಮನೆಗೆ
ಅರಸ ಬಂದನು ಮಣಿಖಚಿತ ಕೇ
ಸರಿಯ ಪೀಠವನಡರಿದನು ನಿಜ
ಚರಣ ಸೇವೆಯಲೆಸೆದರೊಡ ಹುಟ್ಟಿದರು ಪರುಟವಿಸಿ ೬

ಅವನಿಪನ ಸಿಂಹಾಸನವನೇ
ರುವ ಸಗರ್ವಿತರಾರು ನೋಡಿದ
ಡೆವೆಗಳುರಿವುದು ಹಾಯೆನುತ ಕಂಚುಕಿಗಳೈತಂದು
ಇವರನೀಕ್ಷಿಸಿ ಕ್ಷಾತ್ರ ತೇಜವ
ನವಗಡಿಸಲಂಜಿದರು ಹರಿ ತಂ
ದವದಿರೆಬ್ಬಿಸಿ ಬಿನ್ನವಿಸಿದರು ಮತ್ಸ್ಯಭೂಪತಿಗೆ ೭

ಜೀಯ ಸಿಂಹಾಸನಕೆ ದಿವಿಜರ
ರಾಯನೋ ಶಂಕರನೊ ಮೇಣ್ ನಾ
ರಾಯಣನೊ ನರರಲ್ಲ ದೇವರು ಬಂದು ನೋಡುವುದು
ಕಾಯಲಸದಳವೆಮಗೆನಲು ನಿ
ರ್ದಾಯದಲಿ ನೆಲೆಗೊಂಡ ನಿರ್ಜರ
ರಾಯನಾರೆಂದೆನುತಲಾಗ ವಿರಾಟ ಚಿಂತಿಸಿದ ೮

ಕರೆಸಿಕೊಂಡು ಪುರೋಹಿತನನು
ತ್ತರನನಖಿಳ ಮಹಾಪ್ರಧಾನರ
ನರಮನೆಯ ಹೊರವಂಟು ವೋಲಗಶಾಲೆಗೈತರುತ
ಕರಗಿ ಸೂಸಿದ ಚಂದ್ರ ಬಿಂಬದ
ಕಿರಣ ಲಹರಿಗಳೆನಲು ವಿವಿಧಾ
ಭರಣ ಮುಕ್ತಾ ಪ್ರಭೆಯ ಕಂಡನು ನೃಪತಿ ದೂರದಲಿ ೯

ಹರನ ನಾಲುಕು ಮುಖದ ಮಧ್ಯ
ಸ್ಫುರಿತದೀಶಾನನದೊಲಿರೆ ಸೋ
ದರ ಚತುಷ್ಟಯ ಮಧ್ಯದಲಿ ಕಂಡನು ಯುಧಿಷ್ಠಿರನ
ಅರಸಿಯನು ವಾಮದಲಿ ವಿವಿಧಾ
ಭರಣ ಮಣಿ ರಶ್ಮಿಗಳ ಹೊದರಿನ
ಹೊರಳಿಯಲಿ ಕಣ್ಣಾಲಿ ಕೋರೈಸಿದವು ನಿಮಿಷದಲಿ ೧೦

ಮೇಳವೇ ಘಡ ಮನದ ಮತ್ಸರ
ಕಾಲಿಡಲು ತೆರಹಿಲ್ಲ ಮನುಜರ
ಹೋಲುವೆಯ ನಾಟಕದ ನಿರ್ಜರ ಮಂಡಲೇಶ್ವರರು
ಆಲಿಗಳು ಮೇಲಿಕ್ಕಲಮ್ಮವು
ಶೂಲಪಾಣಿಯು ಪರಮ ತೇಜದ
ಚೂಳಿಯೋ ಶಿವ ಶಿವ ಎನುತ್ತ ವಿರಾಟ ಬೆರಗಾದ ೧೧

[illegible] ಬೃಹನ್ನಳೆಯು ಪ್ರ
ಸುಳಿವ [illegible] ಕೆಲಬರು
ಕೆಲರಿದೆತ್ತಣ ನರರು ತೆಗೆ ಸುರಲೋಕ ಪಾಲಕರು
ತಿಳಿಯಲರಿದೆಮಗೆಂದು ಕೆಲಬರು
ತಳವಳಗುಗೊಳುತಿರಲು ಮಂದಿಯ
ಕೆಲಕೆ ನೂಕಿಯೆ ತಂದೆಗುತ್ತರ ನಗುತ ಕೈಮುಗಿದ ೧೨

ತಾತ ಬಿನ್ನಹ ನಿನ್ನೆ ವೈರಿ
ವ್ರಾತವನು ಗೆಲಿದಾತನೀ ತೋ
ರ್ಪಾತನೀತನ ಮುಂದೆ ಮೆರೆವವ ಕೀಚಕಾಂತಕನು
ಈತ ನಕುಲನು ವಾಮದಲಿ ನಿಂ
ದಾತ ಸಹದೇವಾಂಕನನಿಬರಿ
ಗೀತ ಹಿರಿಯನು ಧರ್ಮನಂದನನೆಂದು ತೋರಿಸಿದ ೧೩

ರಮಣಿಯೈವರಿಗೀಕೆ ಕೆಲದಲಿ
ಕಮಲಮುಖಿಯನು ನೋಡು ತಾವಿವ
ರಮಳ ಗುಣ ಗಂಭೀರ ರಾಯರು ಪಾಂಡು ನಂದನರು
ನಮಗೆ ಭಾರಿಯ ಭಾಗ್ಯಲಕ್ಷ್ಮಿಯ
ಮಮತೆಯಾಯ್ತಿನ್ನೇನು ನೃಪಪದ
ಕಮಲದಲಿ ಬೀಳುವೆವು ನಡೆ ನಡೆ ಧನ್ಯರಹೆವೆಂದ ೧೪

ಈತನೇ ಧರ್ಮಜನು ದಿಟ ತಾ
ನೀತನೇ ಪವನಜನು ನಿಶ್ಚಯ
ವೀತನೇ ಫಲುಗುಣನು ಮಾದ್ರೀತನುಜರೇ ಇವರು
ಈ ತಳೋದರಿ ದ್ರುಪದ ಸುತೆಯೇ
ಕೌತುಕವಲೇ ಭುವನಜನ ವಿ
ಖ್ಯಾತರೆಲ್ಲಿಂದೆಲ್ಲಿ ಮೂಡಿದರೆನುತ ಬೆರಗಾದ ೧೫

ವರುಷವೊಂದಜ್ಞಾತ ವಾಸವ
ನಿರದೆ ನೂಕಿದರಿಲ್ಲಿ ಬಳಿಕೆಯ
ಹೊರೆಯ ಹೆಸರವು ಬೇರೆ ನಡವಳಿಯುಂಗವದು ಬೇರೆ
ಮರುಳನಂತಿರೆ ಜಗಕೆ ತೋರನೆ
ಪರಮ ತತ್ವಜ್ಞಾನಿ ನಮ್ಮಾ
ಯರಸುತನ ಫಲವಾಯ್ತು ನಡೆಯೆಂದನು ಕುಮಾರಕನು ೧೬

ದರುಶನಕೆ ಮಣಿ ರತುನ ಕನಕವ
ತರಿಸಿ ಮುದದಲಿ ಮುಳುಗಿ ನಿಜ ಪರಿ
ಕರ ಸಹಿತ ಮೈಯಿಕ್ಕಿದನು ಕಾಣಿಕೆಯನೊಪ್ಪಿಸಿದ
ವರ ನೃಪಾಲ ತ್ರಾಹಿ ಭುವನೇ
ಶ್ವರ ಪರಿತ್ರಾಯಸ್ವ ಕರುಣಿಸು
ಕರುಣಿಸೆಂದಂಘ್ರಿಗಳ ಹಿಡಿದನು ಮತ್ಸ್ಯ ಭೂಪಾಲ ೧೭

ಬಗೆದೆನಪರಾಧವನು ಕರುಣಾ
ಳುಗಳ ಬಲ್ಲಹ ನೀನು ನಿನ್ನಂ
ಘ್ರಿಗಳಿಗೀ ತಲೆ ಬಂಟ ನೀನಿದ ಕಾಯಬೇಕೆನುತ
ಮಿಗೆ ಭಕುತಿ ಭಾವದಲಿ ನಿಜ ಮಂ
ತ್ರಿಗಳು ಮಕ್ಕಳು ಸಹಿತ ಮನ ನಂ
ಬುಗೆಯ ಮರೆದನು ಮತ್ಸ್ಯ ಭೂಪ ಮಹೀಶರಿದಿರಿನಲಿ ೧೮

ಆ ಸುದೇಷ್ಣೆ ಕುಮಾರಿಯೊಡನೆ ವಿ
ಳಾಸಿನೀಜನ ಸಹಿತ ರಾಣೀ
ವಾಸದಲ್ಲಿಗೆ ಬಂದು ಕಾಣಿಕೆ ಕೊಟ್ಟು ಪೊಡವಂಟು
ಆ ಸಕಲ ಪರಿವಾರ ಪುರಜನ
ದೇಶಜನ ಕಾಣಿಕೆಯನಿತ್ತು ಮ
ಹೀಶನಿಗೆ ಮೈಯಿಕ್ಕಿ ಕಂಡುದು ಬಹಳ ಹರುಷದಲಿ ೧೯

ಮುಗುಳು ನಗೆಯಲಿ ಭೀಮ ಪಾರ್ಥರ
ಮೊಗವ ನೋಡಿದನವನಿಪತಿ ಕೈ ಮು
ಗಿದುತಲೆವಾಗಿದರು ತಮ್ಮಂದಿರು ಮಹಿಪತಿಗೆ
ತೆಗೆಸಿದರು ಕಾಣಿಕೆಯನಾ ಮಂ
ತ್ರಿಗಳನಾ ಪರಿವಾರವನು ದೃಗು
ಯುಗದ ಕರುಣಾ ರಸದಲನಿಬರ ಹೊರೆದು ಮನ್ನಿಸಿದ ೨೦

ಶಿರವನೆತ್ತಿ ವಿರಾಟ ಭೂಪನ
ಕರೆದು ಹತ್ತಿರ ಪೀಠದಲಿ ಕು
ಳ್ಳಿರಿಸಲೊಡೆ ಮುರಿಚಿದನು ಕೆಲದಲಿ ಗದ್ದುಗೆಯ ಸರಿದು
ಪರಮ ಸುಕೃತವಲಾ ಧರಾಧೀ
ಶ್ವರನ ದರುಶನವಾಯ್ತು ಧನ್ಯರು
ಧರೆಯೊಳೆಮಗಿನ್ನಾರು ಸರಿಯೆಂದನು ವಿರಾಟ ನೃಪ ೨೧

ದೇಶ ನಿಮ್ಮದು ನಗರ ಹೆಚ್ಚಿದ
ಕೋಶ ನಿಮ್ಮದು ನನ್ನ ಜೀವ ವಿ
ಳಾಸ ನಿಮ್ಮದು ಸಲಹಬೇಹುದು ಬಿನ್ನಹದ ಹದನ
ಈ ಸಮಂಜಸ ದಿವಸದಲಿ ಸಿಂ
ಹಾಸನದಲಭಿಷೇಕವನು ಭೂ
ಮೀಶ ವಿಸ್ತರಿಸುವೆನು ಚಿತ್ತೈಸೆಂದನಾ ಭೂಪ ೨೨

ಎನಲು ನಗುತೆಂದನು ಮಹೀಪತಿ
ವಿನಯ ಮಧುರ ರಸಾಭಿಷೇಕವ
ನೆನಗೆ ಮಾಡಿದೆ ಸಾಕು ಪುನರುಕ್ತಾಭಿಷೇಕವದು
ಜನವಿದೆಮ್ಮದು ನೀನು ನಮ್ಮಾ
ತನು ಧರಿತ್ರಿಯಿದೆಮ್ಮದೆಂಬೀ
ನೆನಹು ತಾನುಪಚಾರ ನಮಗೇಕೆಂದನಾ ಭೂಪ ೨೩

ನೊಂದವರು ಭೀಮಾರ್ಜುನರು ಹಗೆ
ಯಿಂದ ಹಳುವವ ಹೊಕ್ಕು ಮನಸಿನ
ಕಂದು ಕಸರಿಕೆ ಹೋಗದಾ ದುರ್ಯೋಧನಾದಿಗಳ
ಕೊಂದು ಕಳದಲಿ ಮತ್ತೆ ಗಜ ಪುರಿ
ಗೆಂದು ಗಮಿಸುವೆವೆಂಬ ತವಕಿಗ
ರಿಂದು ತಾನೇ ಬಲ್ಲರೆಂದನು ಧರ್ಮನಂದನನು ೨೪

ಎಂದನುತ್ತರನರಸನಂಘ್ರಿಯೊ
ಳಂದು ಮಕುಟವ ಚಾಚಿ ಬಿನ್ನಹ
ವಿಂದು ನೇಮವ ಕೊಡಿ ಕುಮಾರಿಯನೀವೆನರ್ಜುನಗೆ
ಎಂದಡೇಳೇಳೆಂದು ನಸು ನಗೆ
ಯಿಂದ ಪಾರ್ಥನ ನೋಡೆ ಕೈ ಮುಗಿ
ದೆಂದನಾತನು ಮನದ ನಿಶ್ಚಯವನು ಯುಧಿಷ್ಠಿರಗೆ ೨೫

ವರುಷವಿವಳಲಿ ನಾಟ್ಯ ವಿದ್ಯೆಯ
ಪರುಟವಿಸಿದೆನು ತಂದೆಯಂತೀ
ತರುಣಿ ಭಜಿಸಿದಳಾ ಪ್ರಕಾರ ರಹಸ್ಯ ದೇಶದಲಿ
ಗುರುತನದ ಗರುವಾಯಿಯೆತ್ತಲು
ಅರಸಿಯೆಂಬುದಿದಾವ ಮತವೀ
ವರ ಕುಮಾರಿಯನೀವಡಭಿಮನ್ಯುವಿಗೆ ಕೊಡಲೆಂದ ೨೬

ಎವಗೆ ನೀವೇನಾತನೇನು
ತ್ಸವದೊಳಾಗಲಿಯೆನೆ ವಿರಾಟನ
ನವನಿಪತಿ ಮನ್ನಿಸಿದನಿತ್ತನು ನಗುತ ವೀಳೆಯವ
ಯುವಗೆ ಪರಮಸ್ವಾಮಿಯೆಮ್ಮು
ತ್ಸವದ ನೆಲೆಯೆಮ್ಮೈವರಸು ಯಾ
ದವ ಶಿರೋಮಣಿ ಕೃಷ್ಣನಭಿಮತವೆಮ್ಮ ಮತವೆಂದ ೨೭

ಪೊಡವಿಯೊಡೆತನವೆಮಗೆ ಕ
ಟ್ಟೊಡೆಯ ಕೃಷ್ಣನು ಕೃಷ್ಣನೊಡಬ
ಟ್ಟೊಡೆ ವಿವಾಹ ನಿರಂತರಾಯವು ಚಿಂತೆ ಬೇಡೆನಲು
ಒಡಬಡಲಿ ಮೇಣಿರಲಿ ಗುರು ನಿ
ಮ್ಮಡಿ ಮುರಾರಿಯ ತೋರಿಸುವಿರಾ
ದೊಡೆ ಕೃತಾರ್ಥನು ತಾನೆನುತ ಹಿಗ್ಗಿದನು ಮತ್ಸ್ಯ ನೃಪ ೨೮

ಪರಿಪರಿಯ ಪಾವುಡವ ಕಟ್ಟಿಸಿ
ಹರುಷದಲಿ ಬಿನ್ನಹದ ವೋಲೆಯ
ಬರೆಸಿದನು ವೇಗಾಯ್ಲ ದೂತರನಟ್ಟಿದನು ಭೂಪ
ಚರರು ಪಯಣದ ಮೇಲೆ ಪಯಣದ
ಭರದಿ ಬಂದರು ಕೃಷ್ಣರಾಯನ
ಪುರಕೆ ಪರಿತೋಷದಲಿ ಹೊಕ್ಕರು ರಾಜ ಮಂದಿರವ ೨೯

ಬರವ ಬಿನ್ನಹ ಮಾಡೆ ಪಡಿಹಾ
ರರು ಮುರಾರಿಯ ನೇಮದಲಿ ಚಾ
ರರನು ಹೊಗಿಸಲು ಬಂದು ಹೊಕ್ಕರು ಕೃಷ್ಣನೋಲಗವ
ದರುಶನವ ಮಾಡುತ್ತ ಚರಣಾಂ
ಬುರುಹವಲಿ ಮೈಯಿಕ್ಕಿ ದೇವನ
ಹೊರೆಯುಲಿಳುಹಿದರಿವರು ಕಳುಹಿದ ಬಿನ್ನವತ್ತಳೆಯ ೩೦

ನಸುನಗುತ ಮುರವೈರಿ ಮಿಗೆ ಮ
ನ್ನಿಸಿದನವರನು ಪಾಂಡು ತನಯರ
ಕುಶಲವನು ದುರುಪದಿಯ ಸುಕ್ಷೇಮವನು ಬೆಸಗೊಳಲು
ಕುಶಲರನಿಬರು ಜೀಯ ಭಕ್ತ
ವ್ಯಸನ ಭಾರವು ನಿಮ್ಮಲಿರೆ ಜೀ
ವಿಸುವುದರಿದೇ ಪಾಂಡು ನಂದನರೆಂದರಾ ಚರರು ೩೧

ಕಳುಹಿದುಡುಗೊರೆ ಜೀಯ ನಿಮ್ಮಡಿ
ಗಳಿಗೆ ರಾಣೀವಾಸ ವರ್ಗಕೆ
ಬಲಗೆ ವಸುದೇವರಿಗೆ ದೇವಕಿಯುಗ್ರಸೇನರಿಗೆ
ಕುಲ ಗುರುಗಳಕ್ರೂರನುದ್ಧವ
ಬಲುಭುಜನು ಕೃತವರ್ಮ ಸಾತ್ಯಕಿ
ಲಲಿತ ಸಾಂಬ ಕುಮಾರ ಕಂದರ್ಪಾನಿರುದ್ಧರಿಗೆ ೩೨

ಎನಲು ನಸುನಗೆಯಿಂದ ಕುಂತಿಯ
ತನುಜರಟ್ಟಿದ ಪಾವುಡಂಗಳ
ನನಿತುವನು ತೆಗೆಸಿದನು ಕೆಲದಲಿ ಸಂಧಿ ವಿಗ್ರಹಿಯ
ದನುಜಹರನೀಕ್ಷಿಸಲು ಲಿಖಿತವ
ನನುನಯದೊಳಳವಡಿಸಿ ಬಿನ್ನಹ
ವೆನುತ ನೇಮವ ಕೊಂಡು ಕಳಕಳವಡಗೆ ವಾಚಿಸಿದ ೩೩

ಸ್ವಸ್ತಿ ದಾನದ ರಾಯ ಕುಂಜರ
ಮಸ್ತಕಾಂಕುಶ ಖೇಲನಾ ಪರಿ
ಯಸ್ತ ಯದುಕುಲ ಸಿಂಹಸಂಹೃತ ಜನ್ಮದುರಿತಭಯ
ಹಸ್ತಕಲಿತ ಸುದರುಶನೋರ್ಧ್ವಗ
ಭಸ್ತಿಲವಶಮಿತಾರ್ಕ ಪರಿವೃಢ
ವಿಸ್ತರಣ ಚಿತ್ತೈಸು ಕುಂತಿಯ ಸುತರ ಬಿನ್ನಪವ ೩೪

ದೇವ ನಿಮ್ಮಡಿಗಳ ಕೃಪಾ ಸಂ
ಜೀವನಿಯಲೆಮ್ಮಸುಗಳೊಡಲಿನ
ಠಾವ ಮೆಚ್ಚಿದವೊದೆದು ಹಾಯ್ದವು ವಿಪಿನ ಮಂದಿರವ
ಈ ವರುಷದಜ್ಞಾತವಾಸ ಗ
ತಾವಶೇಷಣವಾಯ್ತು ಕಂಗಳಿ
ಗೀವುದವಯವ ದರುಶನಾಮೃತಪಾನ ಸಂಪದವ ೩೫

ದಾಟಿದೆವು ನುಡಿದವಧಿಯನು ವೈ
ರಾಟ ಪುರದಲಿ ತುರುವಿಡಿದು ಮೈ
ನೋಟಕೋಸುಗ ಬಂದು ನುಗ್ಗಾಯಿತ್ತು ಕುರುಸೇನೆ
ತೋಟಿ ಜಯಿಸಿದೊಡೆಮ್ಮನರಿದು ವಿ
ರಾಟ ಮನ್ನಿಸಿ ತನ್ನ ಮಗಳ ಕಿ
ರೀಟಿ ತನಯಂಗೀವ ಭರವಿದೆ ದೇವರವಧರಿಸಿ ೩೬

ಮದುವೆಯೆಂಬುದು ನೆವ ನಿಜ ಶ್ರೀ
ಪದವ ತೋರಿಸಬೇಕು ವನ ವಾ
ಸದ ಪರಿಕ್ಲೇಶಾನು ಸಂತಾಪವನು ಬೀಳ್ಕೊಡಿಸಿ
ಕದಡು ಹೋಗಲು ಕಾಣಬೇಹುದು
ಹದುಳವಿಟ್ಟೆಮಗುಚಿತ ವಚನದ
ಹದವಳೆಯಲುತ್ಸಾಹಸಸಿಯನು ದೇವ ಸಲಹುವುದು ೩೭

ಕರುಣಿ ಬಿಜಯಂಗೈದು ಭಕ್ತರ
ಹೊರೆಯ ಬೇಹುದು ಬೇಡಿಕೊಂಬೆನು
ಅರಸಲೇಕೆಳೆಗಂದಿ ತಾಯ್ತಾನರಸುವಂದದಲಿ
ಚರಣಭಜಕ ಕುಟುಂಬನೆಂಬೀ
ಬಿರುದ ಪಾಲಿಸಿ ಬಿನ್ನಹವನವ
ಧರಿಸಿ ಕಾಣಿಸಿ ಕೊಡುವುದೆಮಗೆ ಮಹಾ ಪ್ರಸಾದವನು ೩೮

ಕೇಳಿ ಹರುಷಿತನಾಗಿ ಕಡು ಕರು
ಣಾಳು ಹೊಂಪುಳಿಯೋಗಿ ಭಕ್ತರ
ಮೇಲಣೊಲವಿನ ಬಹಳ ಪರಮ ಸ್ನೇಹ ಪಸರಿಸಿತು
ಕೇಳಿದೆವೆ ಹರ ಹರ ಯುಧಿಷ್ಠಿರ
ನೇಳಿಗೆಯನಾ ಕೌರವೇಶ್ವರ
ನೂಳಿಗವನೆನುತಸುರರಿಪು ನೋಡಿದನು ಕೆಲಬಲನ ೩೯

ಚಿಂತೆ ಬೀತುದು ಪಾಂಡು ಮಾವನ
ಸಂತತಿಗಳಜ್ಞಾತ ವಾಸವ
ನೆಂತು ಪಂಥದ ಮೇಲೆ ಕಳೆದರೊ ನಮ್ಮ ಪುಣ್ಯವಿದು
ಕುಂತಿ ದೇವಿಯರುಮ್ಮಳಿಸೆ ನಾ
ವೆಂತು ಬದುಕುವೆವಕಟೆನುತ್ತ ನಿ
ರಂತರವು ಮರುಗುವನು ಬೊಪ್ಪನು ಶಿವ ಶಿವಾಯೆಂದ ೪೦

ಭವಣೆಗೆಯು ಬಂದಡವಿಯಲಿ ಪಾಂ
ಡವರು ನವೆದರು ರಾಜ್ಯವನು ಯಾ
ದವರು ನಾವನುಭವಿಸುತಿದ್ದೆವು ನವೆದರಿನ್ನಬರ
ಅವರ ಸೊಗಸೇ ನಮ್ಮ ಸೊಗಸುಗ
ಳವರ ದುಗುಡವೆ ನಮ್ಮದದರಿಂ
ದವರ ವಿಮಳಾಭ್ಯುದಯ ನಮಗೆಂದಸುರರಿಪು ನುಡಿದ ೪೧

ಕಾಲ ಕೈಗೂಡುವೊಡೆ ಲೇಸಿನ
ಮೇಲೆ ಲೇಸುಗಳೊದಗುವವು ಭೂ
ಪಾಲ ಕುಂತಿಯ ಸುತರ ಬೆಳವಿಗೆ ಮೊದಲ ಮಂಗಳವು
ಮೇಲೆ ತಂಗಿಯ ಮಗನ ಮದುವೆ ವಿ
ಶಾಲ ಸುಖವದು ನಿಖಿಳ ಯಾದವ
ಜಾಲ ಪಯಣವ ಮಾಡಲೆಂದಸುರಾರಿ ನೇಮಿಸಿದ ೪೨

ಚರರಿಗುಡುಗೊರೆ ಗಂಧ ನಿಖಿಲಾ
ಭರಣ ಕತ್ತುರಿ ಕರ್ಪುರವನಿ
ತ್ತರಿದಿಶಾಪಟ ಬೀಳುಗೊಟ್ಟನು ರಾಯಸವ ಬರೆಸಿ
ಮರಳಿ ದೂತರು ಬಂದು ಮತ್ಸ್ಯನ
ಪುರವ ಹೊಕ್ಕರು ಕೃಷ್ಣರಾಯನ
ಕರುಣದಳತೆಯ ಬಿನ್ನವಿಸಿದರು ಪಾಂಡು ತನಯರಿಗೆ ೪೩

ಬಳಿಕ ಸುಮುಹೂರ್ತದಲಿ ಮತ್ಸ್ಯನ
ಹೊಳಲ ಹೊರವಂಟುತ್ತರ ದಿಶಾ
ವಳಯದಲಿ ರಚಿಸಿದರುಪಪ್ಲವ್ಯಾಖ್ಯಪುರವರವ
ನೆಲನಗಲದಲಿ ಕಟ್ಟಿ ಕೇರಿಯ
ನಳವಡಿಸಿದರು ನಿಖಿಳ ನೃಪರಿಗೆ
ಬಳಿಯನಟ್ಟಿದನುತ್ತರೋತ್ತರವಾದುದಿವರುದಯ ೪೪

ಜೋಳಿ ಹರಿದವು ನಿಖಿಳ ರಾಯರಿ
ಗೋಲೆಯುಡುಗೊರೆಯಿಕ್ಕಿದವು ಪಾಂ
ಚಾಲಪತಿ ಹೊರವಂಟ ಮೂರಕ್ಷೋಣಿ ಬಲ ಸಹಿತ
ನೀಲನು ಯುಧಾಮನ್ಯು ಸಮರ ಕ
ರಾಳ ಧೃಷ್ಟದ್ಯುಮ್ನ ಕೀರ್ತಿ ವಿ
ಶಾಲ ಧೀರ ಶಿಖಂಡಿ ಸಹಿತಾ ದ್ರುಪದನೈತಂದ ೪೫

ಇದಿರುಗೊಂಡರು ಹರುಷದಲಿ ದುರು
ಪದಿಯ ಬಾಂಧವ ಪೈಕವನು ಮಿಗೆ
ಮುದದಿ ಕಾಣಿಸಿಕೊಂಡರಖಿಳ ಮಹಾ ಮಹೀಶ್ವರರ
ಐದಗಿತಕ್ಷೋಹಿಣಿ ಬಲ ಸಂ
ಪದವನುನ್ನತ ವಸ್ತುಗಳ ಸೊಂ
ಪೊದವಿದವು ಕೈಗೈದು ಮದುವೆಯ ಮಂಗಳಾಭ್ಯುದಯ ೪೬

ದೇವನೀ ಬಹನೆಂದು ಬಂದರು
ದಾವಣೆಯು ಹವಣರಿದು ಬಳಿಕ ಮ
ಹಾ ವಿಳಾಸದಳೊಪ್ಪವಿಟ್ಟರು ತಮ್ಮ ನಗರಿಗಳ
ಹೂವಲಿಯ ವೀಥಿಗಳ ನವ ರ
ತ್ನಾವಳಿಯ ಸೂಸಕದ ಭದ್ರದ
ಲೋವೆಗಳ ಲಂಬಳದಲೆಸೆದವು ಕೇರಿ ಕೇರಿಗಳು ೪೭

ಚಾರುತರ ಕತ್ತುರಿಯ ಸಾದಿನ
ಸಾರಣೆಯ ಕುಂಕುಮದ ರಸಗಳ
ಕಾರಣೆಯ ನವಚಿತ್ರಪತ್ರದ ಬಹಳ ಭಿತ್ತಿಗಳ
ಓರಣದ ಬೀದಿಗಳ ತಳಿಗೆಯ
ತೋರಣದ ಹೊಂಜಗುಲಿಗಳ ಪ
ನ್ನೀರ ಚಳೆಯದ ರಚನೆಯಲಿ ಮನೆ ಮನೆಗಳೊಪ್ಪಿದವು ೪೮

ಕಟ್ಟಿದವು ಗುಡಿ ಮನೆಗಳಲಿ ಮೇ
ಲ್ಕಟ್ಟು ಬಿಗಿದವು ಪುರದ ನಾರಿಯ
ರುಟ್ಟು ತೊಟ್ಟರು ಕಳಶ ಕನ್ನಡಿ ಸಹಿತ ದೇಶಿಯಲಿ
ಇಟ್ಟಣಿಸಿ ಗಜ ವಾಜಿ ರಥ ಸಾ
ಲಿಟ್ಟು ತೋರುವ ದನುಜರಾಯ ಘ
ರಟ್ಟನನು ನಡೆದಿದಿರುಗೊಂಡರು ಪಾಂಡು ನಂದನರು ೪೯

ಕಳಶ ಕನ್ನಡಿ ವಾದ್ಯರವ ಮಂ
ಗಳ ಮಹಾಂಬುಧಿ ಮಸಗಿದವೊಲು
ಜ್ವಲ ಪತಾಕಾವಳಿಯ ವಿಮಳಚ್ಛತ್ರ ಚಾಮರದ
ಹೊಳೆವ ಕಂಗಳ ಮುಖದ ಕಾಂತಿಯ
ಮೊಲೆಗಳೊಡ್ಡಿನ ಮಂದ ಗಮನದ
ತಳಿದ ಮುಸುಕಿನ ಮೌಳಿಕಾತಿಯರೈದಿತೊಗ್ಗಿನಲಿ ೫೦

ಹೊಳಹು ಮಿಗೆ ದೂರದಲಿ ಗರುಡನ
ಹಳವಿಗೆಯ ಕಂಡಂದಣಂಗಳ
ನಿಳಿದು ಮೈಯಿಕ್ಕಿದರು ದ್ರುಪದ ವಿರಾಟ ಪಾಂಡವರು
ಬಳಿಕ ಭೂಪರು ಕಾಲು ನಡೆಯಲಿ
ನಲಿದು ಬರುತಿರಲಾನೆಯಿಂದಿಳೆ
ಗಿಳಿದು ಬಿಜಯಂಗೈದನಸುರಾರಾತಿ ಕರುಣದಲಿ ೫೧

ಇತ್ತನವರಿಗೆ ಸಮಯುವನು ದೇ
ವೋತ್ತಮನು ನಿಗಮೌಘವರಸಿದ
ಡತ್ತಲಿತ್ತಲು ಸರಿವ ಮುನಿಗಳ ಮನಕೆ ಮೈಗೊಡದ
ಹೆತ್ತ ಮಕ್ಕಳು ನಿಲಲಿ ಭಕ್ತರ
ನಿತ್ತ ಕರೆ ನೆನೆವರಿಗೆ ತನ್ನನು
ತೆತ್ತು ಬದುಕುವೆನೆಂಬ ಬೋಳೆಯರರಸ ನಡೆತಂದ ೫೨

ಬಲದ ಪದಘಟ್ಟಣೆಯ ರಜದಿಂ
ಬೆಳುಪಡಗಿದಂಬರದ ಮಾರ್ಗದ
ಝಳದ ಕಿರುಬೆಮರುಗಳ ಲಲಿತ ಕಪೋಲ ಮಂಡಲವ
ಕೆಲದ ಪಾಯವಧಾರಂಗಳ ಕಳ
ಕಳದ ಕರುಣಾರಸವ ಸೂಸುವ
ಮೆಲುನಗೆಯ ಸಿರಿಮೊಗದ ಕೃಷ್ಣನ ಕಂಡುದಾ ಸೇನೆ ೫೩

ಬಾಗಿದವು ಬರಿಕೈಗಳನು ಹಣೆ
ಗಾಗಿ ಮುರುಹಿದವಾನೆಗಳು ತಲೆ
ವಾಗಿ ಗುಡಿಗಟ್ಟಿದವು ಹೇಷಾರವದ ತೇಜಿಗಳು
ತೂಗಿ ತನುವನು ಪುಳಕದಲಿ ಮನ
ಲಾಗು ಮಿಗೆ ಮೈಮರೆದು ಹರುಷದ
ಸಾಗರದಲೋಲಾಡುತಿರ್ದುದು ಕೂಡೆ ತಳತಂತ್ರ ೫೪

ಅಂಗನೆಯರರವಿಂದನಾಭನ
ಮಂಗಳ ಶ್ರೀಮೂರ್ತಿ ಸುಧೆಯನು
ಕಂಗಳಲಿ ಕುಡಿಕುಡಿದು ಪಡೆಯರು ಮತ್ತೆ ದಣಿವುಗಳ
ಅಂಗಜನ ಪೆತ್ತಯ್ಯ ನೀ ರೂ
ಹಿಂಗೆ ಬಡವನೆಯೆನುತ ಮುರಹರ
ನಂಗ ಶೋಭೆಯ ಬಂದಿಯಲಿ ಸಿಲುಕಿತ್ತು ಸತಿನಿವಹ ೫೫

ಎರಡು ಸೇರೆಯ ತುಂಬಿ ರತ್ನವ
ಸುರಿದು ಮೈಯಿಕ್ಕಿದನು ಭೂಪತಿ
ಚರಣದಲಿ ಚತುರಾಸ್ಯಜನಕನ ವಿಮಳಭಕ್ತಿಯಲಿ
ನರ ವೃಕೋದರ ನಕುಲ ಸಹದೇ
ವರು ವಿರಾಟ ದ್ರುಪದ ಮೊದಲಾ
ಗಿರೆ ಸಮಸ್ತ ನೃಪಾಲಕರು ಮೈಯಿಕ್ಕಿತೊಗ್ಗಿನಲಿ ೫೬

ಶಿರವ ನೆಗಹಿ ಯುಧಿಷ್ಠಿರನ ಮೈ
ಮುರಿಯಲೀಯದೆ ಕೃಷ್ಣನಪ್ಪಿದ
ನುರುತರ ಪ್ರೇಮದಲಿ ಭೀಮಾರ್ಜುನರ ಯಮಳರನು
ಹರುಷದಲಿ ತೆಗೆದಪ್ಪಿ ಭೂಮೀ
ಶ್ವರರ ಮನ್ನಿಸಿದನು ವಿಳಾಸಿನಿ
ಯರ ವಿಡಾಯಿಯಲರಸಿ ಕಂಡಳು ಬಂದು ಮುರಹರನ ೫೭

ಕಾಣಿಕೆಯ ಕೈಕೊಂಡು ರಾಯನ
ರಾಣಿಯನು ಮನ್ನಿಸಿದ ತನ್ನಯ
ರಾಣಿವಾಸದ ಹೊರಗೆ ನೇಮವ ಕೊಟ್ಟು ಕಳುಹಿದನು
ರಾಣಿ ರುಕುಮಿಣಿಯಾದಿಯಾದ
ಕ್ಷೋಣಿಧರನರಸಿಯರನನಿಬರ
ಕಾಣಿಕೆಯ ಕೊಟ್ಟೆರಗಿ ದುರುಪದಿ ಕಂಡಳೊಲವಿನಲಿ ೫೮

ದರುಶನವನೊಲಿದಿತ್ತು ವಸುದೇ
ವರನು ದೇವಕಿ ದೇವಿಕಿಯರ ಸಂ
ಕರುಷಣನ ಮಹದುಗ್ರಸೇನನ ಕಂಡನವನೀಶ
ವರ ಸುಭದ್ರಾದೇವಿ ಭಾವಂ
ದಿರಿಗೆ ವಂದಿಸಿದಳು ಕುಮಾರನು
ಹರುಷದಲಿ ಬಿಗಿಯಪ್ಪಿದನು ಅಭಿಮನ್ಯು ಪಾಂಡವರ ೫೯

ಕೈದಣಿಯೆ ವಸುದೇವನಳಿಯನ
ಮೈದಡವಿದನು ಮಗನೆ ಬನದೊಳ
ಗೊಯ್ದು ವಿಧಿ ಬಂಧಿಸಿತಲಾ ಸಾಕಿನ್ನು ದೈವವನು
ಬೈದು ಮಾಡುವುದೇನು ದುರುಪದಿ
ಯೈದೆತನವುಂಟಾಗಿ ದುರಿತವ
ಕೊಯ್ದು ನರಲೋಕಕ್ಕೆ ಬಂದಿರಿ ನಮ್ಮ ಪುಣ್ಯದಲಿ ೬೦

ಅರಸಿಯೈದೆತನಕ್ಕೆ ನಮ್ಮೈ
ವರ ನಿಜಾಯುಷ್ಯಕ್ಕೆ ರಾಜ್ಯದ
ಸಿರಿಯ ಸೊಂಪಿಗೆ ನಿಮ್ಮ ಮಗನೀ ಕೃಷ್ಣ ಹೊಣೆ ನಮಗೆ
ಸುರರು ಸರಿಯಿಲ್ಲೆಮಗೆ ಮಿಕ್ಕಿನ
ನರರು ಗಣ್ಯವೆ ಮಾವ ಕೇಳೆಂ
ದರಸ ವಸುದೇವನನು ಮಧುರೋಕ್ತಿಯಲಿ ಮನ್ನಿಸಿದ ೬೧

ತಂದೆ ಬೇಡೆಮಗವ್ವೆ ಬೇಡೆಮ
ಗಿಂದುಮುಖಿಯರನೊಲ್ಲೆವಾವ್ ಮನ
ಸಂದು ಮೆಚ್ಚಿಹೆವೆಮ್ಮ ಭಕ್ತರಿಗೆಂಬನನವರತ
ನೊಂದೆನೆಂಬನು ತನ್ನವರು ಮನ
ನೊಂದರಾದೊಡೆ ತನ್ನವರ ಸುಖ
ವಿಂದು ತನ್ನದದೆಂಬುದೇ ಸಿರಿಕೃಷ್ಣ ಮತವೆಂದ ೬೨

ಅರಸಿಯರ ಬಗೆಗೊಳ್ಳ ಮಕ್ಕಳ
ಸರಕು ಮಾಡನು ದೇಶ ಕೋಶದ
ಸಿರಿಯ ಗಣಿಸನು ಖಡ್ಡಿಗೊಳ್ಳನು ಸಂಪದವ
ಹರಿ ಪರಾಯಣರೆಂದೊಡವರಿಗೆ
ಹರಹಿಕೊಂಬನು ಮಗನ ಶೀಲವು
ನರರ ಪರಿಯಲ್ಲೆಂದನಾ ವಸುದೇವನಳಿಯಂಗೆ ೬೩

ಲೋಗರೇ ನೀವೆಮಗೆ ನಿವಗರ
ಗಾಗಿ ಕರಗುವನದು ನಿಲಲಿ ತನ
ಗಾಗದವರಿಗೆ ತನ್ನ ತೆರುವನು ಕೊಲುವ ಹಗೆಗೊಲಿವ
ಲೋಗರೆನ್ನವರೆಂದು ಲೋಗರಿ
ಗಾಗಿ ಬದುಕುವೆನೆಂಬ ಬಲುಗೈ
ಬಾಗಿ ಕೃಷ್ಣನನೇನ ಹೇಳುವೆನೆಂದನರಸಂಗೆ ೬೪

ಬೊಪ್ಪನವರೇಯೆಮ್ಮ ದೂರದೆ
ಯಿಪ್ಪವರು ತಾವಲ್ಲ ಸಾಕಿ
ನ್ನೊಪ್ಪದಲಿ ಬಾಯೆಂದು ಮುರರಿಪು ಕರೆದನವನಿಪನ
ಚಪ್ಪರಿಸಿ ಕೌರವರು ತುರುಗಳ
ತಪ್ಪಿಸಿದುದೇನಾಯ್ತು ಪಾರ್ಥನ
ದರ್ಪದನುವೆಂತೆಂದು ಬೆಸಗೊಂಡನು ಮುರಧ್ವಂಸಿ ೬೫

ಹೂಹೆಗೆಲ್ಲಿಯ ದರ್ಪ ಮನುಜನ
ಸಾಹಸವು ಬೇರೇನು ಯಂತ್ರದ
ಹಾಹೆ ಯಂತ್ರವನುಳಿದು ಜೀವಿಸಲರಿವುದೇ ಬೇರೆ
ದೇಹಿ ನೀ ನಾವೆಲ್ಲ ನಿನ್ನಯ
ದೇಹವಿದರೊಳಗೆಮಗೆ ಗರ್ವದ
ಗಾಹಿದೆಲ್ಲಿಯದೆಂದು ಬಿನ್ನವಿಸಿದನು ಯಮಸೂನು ೬೬

ಎಸಳು ಮೊನೆಯೊಂದಾಗಿ ತಾವರೆ
ಮುಸುಕುತಿದೆ ನೈದಿಲೆಯ ನೆತ್ತಿಯ
ಬೆಸುಗೆ ಬಿಡುತಿದೆ ಜಕ್ಕವಕ್ಕಿಯ ತೆಕ್ಕೆ ಸಡಿಲುತಿದೆ
ದೆಸೆದೆಸೆಯ ತಾಣಾಂತರದ ಹೊಂ
ಬಿಸಿಲು ಬೀತುದು ಜೀಯ ಬಿನ್ನಹ
ವಸುಧೆ ತಂಪೇರಿತ್ತು ಸಂಧ್ಯಾ ಸಮಯವಾಯ್ತೆಂದ ೬೭

ನಗುತ ಹರಿ ನಿಂದಿರಲು ಕೈ ದಂ
ಡಿಗೆಯುವರು ಹೊದ್ದಿದರು ರೂವಾ
ರಿಗೆಗೆ ಬಿಜಯಂಗೈದನುಘೇಯೆಂದುದು ಸುರಸ್ತೋಮ
ಬಿಗಿದ ದಡ್ಡಿಯು ಬದ್ದರದ ಬೀ
ಯುಗದ ರಾಣೀವಾಸದಂದಣ
ತೆಗೆದು ನಡೆದುದು ಮುಂದೆ ಸಂತೋಷದಲಿ ಯದುಸೇನೆ ೧೮

ಹೊಕ್ಕನಸುರಾರಾತಿ ಪಾಂಡವ
ರಿಕ್ಕೆಲದಿ ಬರೆ ನಗರಜನ ಮೈ
ಯಿಕ್ಕಿ ಬೀದಿಯ ಧೂಳು ಕವಿದುದು ಮುಂದೆ ಸಂದಣಿಸಿ
ಹೊಕ್ಕು ಹೊಗಳುವ ಸುತಿಗಳಿಗೆ ಕೈ
ಮಿಕ್ಕ ಕಳ್ಳನು ಪಾಂಡು ಸುತರಿಗೆ
ಸಿಕ್ಕಿದನು ಶಿವಯೆನುತಲಿರ್ದುದು ಸೂರಿ ಸಂದೋಹ ೧೯

ಮೇಲೆ ಬೀಳುವ ಮಂದಿಯನು ಕೈ
ಗೋಲಿನವರಪ್ಪಳಿಸೆ ಲಕ್ಷ್ಮೀ
ಲೋಲನವದಿರ ಜರೆದು ಕಾಣಿಸಿಕೊಳುತ ಪುರಜನವ
ಮೇಲು ನೆಲೆಯುಪ್ಪರಿಗೆಗಳ ವರ
ಬಾಲೆಯರ ಕಡೆಗಂಗಳೆಸೆವ ನಿ
ವಾಳಿಗಳ ಕೈಕೊಳುತ ಹೊಕ್ಕನು ರಾಜಮಂದಿರವ ೨೦

ಹಿಡಿದರಾರತಿಗಳನು ಬಣ್ಣದ
ಸೊಡರು ಸುಳಿದವು ಮುಂದೆ ನೆಲನು
ಗ್ಗಡಿಪ ಭೀಮಾರ್ಜುನರ ಮೇಳಾಪದಲಿ ಹರುಷದಲಿ
ಹಿಡಿದ ಕೈದೀವಿಗೆಗಳನು ಕೈ
ದುಡುಕಿ ತಿವಿದಾಡುತ್ತ ಕಾಂತಿಯ
ಕಡಲ ಮಣಿಮಯ ಪೀಠದಲಿ ಮಂಡಿಸಿದನಸುರಾರಿ ೨೧

ಬೀಳುಗೊಟ್ಟನು ಸಕಲ ಭೂಮೀ
ಪಾಲರನು ಕುಂತಿಯ ಕುಮಾರರ
ಮೇಳದಲಿ ಪರಿಮಿತದಲಸುರಾರಾತಿ ನಸು ನಗುತ
ಸೋಲದಲಿ ಮೈದಣಿದು ಕುರು ಭೂ
ಪಾಲನುಚಿತವ ಮಾಡಿ ರಾಜ್ಯವ
ನಾಳಿಸುವ ಹದನುಂಟೆ ನಿಮ್ಮಾಳಾಪವೇನೆಂದ ೨೨

ಮರಳಿದವು ತುರುವಿತ್ತಲಹಿತರು
ಸರಿದರತ್ತಲು ಮತ್ಸ್ಯನೆಮ್ಮ
ವರನು ನಾವೆಂದರಿದು ಕೊಂಡಾಡಿದನು ವಿನಯದಲಿ
ವರ ಸುಭದ್ರಾ ನಂದನಂಗು
ತ್ತರೆಯನೀವರ್ಥಿಯಲಿಯಿರಲಾ
ಕರೆಯಲಟ್ಟಿದೆವೆಂದು ಬಿನ್ನವಿಸಿದನು ಭೂಪಾಲ ೨೩

ಕೊಳುಗೊಡೆಗೆ ಸೇರುವರೆ ಮದುವೆಯ
ನೊಲಿದು ದೇವರು ಮಾಡುವುದು ಮೇ
ಲಿಳೆಯ ಕಾರ್ಯವ ಬುದ್ಧಿಗಲಿಸುವದೆಮ್ಮನುದ್ಧರಿಸಿ
ಬಳಿಕ ಬಿಜಯಂಗೈವುದಿದು ಹದ
ನೆಲೆ ದಯಾಂಬುಧಿ ಕೇಳೆನಲು ನೃಪ
ತಿಲಕನುಚಿತದ ಬಿನ್ನಹಕೆ ಮನವೊಲಿದು ಹರಿ ನುಡಿದ ೨೪

ಕೊಳುಗೊಡೆಗೆ ತಪ್ಪೇನು ವಸುವಿನ
ಕುಲ ವಿರಾಟನು ಇಂದು ವಂಶಾ
ವಳಿಯುವರು ನೀವಾಭಿಜಾತ್ಯದೊಳಿಲ್ಲ ಹಳಿವುಗಳು
ಒಳುನುಡಿಗಳಲಿ ದೈವ ಶಕುನಾ
ವಳಿಗಳಾದೊಡೆ ಹರುಷದಲಿ ಮಂ
ಗಳ ಮುಹೂರ್ತವ ಮಾಡಿಯೆಂದನು ಕೃಷ್ಣ ನಸುನಗುತ ೨೫

ಒಸಗೆಯಲಿ ನಿಸ್ಸಾಳ ತತಿ ಗ
ರ್ಜಿಸಿದವಖಿಳ ಜನಂಗಳುತ್ಸಾ
ಹಿಸಿತು ಕನ್ಯಾವರಣವಾಯಿತು ವೈದಿಕೋಕ್ತಿಯಲಿ
ಎಸೆಯಲಭಿಮನ್ಯುವನು ಸಿಂಗಾ
ರಿಸಿತು ಯದು ಪಾಂಚಾಲ ಮತ್ಸ್ಯ
ಪ್ರಸರದಲಿ ಮೆಟ್ಟಕ್ಕಿ ಜೀರಿಗೆ ಬೆಲ್ಲವನುವಾಯ್ತು ೨೬

ವರ ಮುಹೂರ್ತದ ಘಳಿಗೆವಟ್ಟಲ
ಭರಿತದೊಳು ಪುಣ್ಯಾಹವದ ವಿ
ಸ್ತರದಲಕ್ಷತೆ ತಳಿದು ತಂದರು ವಿಮಲ ಮಂಟಪಕೆ
ಪರಮ ಋಷಿಗಳ ಹೋಮದಲಿ ಶಿಖಿ
ವರನ ಬಲಗೊಂಡರು ಕುಮಾರಿಯು
ವರಿಸೆ ವೈದಿಕದಿಂದ ಬಂದಳು ವರನ ವಾಮದಲಿ ೨೭

ವಿಭವವೈವಡಿಯಾಗೆ ಸದ್ವಿಜ
ಸಭೆಯನಾರಾಧಿಸಿದನವನೀ
ವಿಭುಗಳಿತ್ತರು ಮುಯ್ಯ ಉಡುಗೊರೆ ರತ್ನ ಭೂಷಣವ
ಅಭವ ಸನ್ನಿಭ ವೀರನಾಗೆಂ
ದಿಭಗಮನೆಯರು ಕೃಷ್ಣನರಸಿಯು
ರಭಿಜನಾಮಲ ತಿಲಕನನು ಹರಸಿದರು ಹರುಷದಲಿ ೨೮

ಇದು ಶುಭೌಘದ ಗರುಡಿ ಬಹು ಸಂ
ಪದದ ನೆಲೆಮನೆ ಸೊಂಪಿನಾಗರ
ವಿದು ಪರಾನಂದ ಪ್ರವಾಹದ ಜನ್ಮಭೂಮಿಯಿದು
ಮುದದ ಕೇಳೀಸ್ಥಾನ ವಿಮಲಾ
ಭ್ಯುದಯದೋಲಗಶಾಲೆ ಲಕ್ಷ್ಮೀ
ಸದನವೆನೆ ರಂಜಿಸಿದುದಭಿಮನ್ಯುವಿನ ವೈವಾಹ ೨೯

ಯಾದವರು ಪಾಂಚಾಲ ಮತ್ಸ್ಯರು
ಮೇದಿನೀಪತಿ ಪಾಂಡು ಸೋಮಕ
ರಾದಿಯಾದನ್ವಯವನಗಣಿತ ಬಂಧು ಬಳಗವನು
ಆದರಿಸಿದನು ವಿನಯದಲಿ ವಿ
ತ್ತಾದಿ ಸತ್ಕಾರದಲಿ ದಣಿದುದು
ಮೇದಿನೀಜನವವನಿಪನ ಸನ್ಮಾನ ದಾನದಲಿ ೩೦

ವರ ಚತುರ್ಥಿಯೊಳಿರುಳು ಮೆರೆದರು
ಪುರದಲುತ್ಸಾಹದಲಿ ದಂಪತಿ
ವರರು ಭೂಮಿಾಚಾರ ಚಮರದ ಚಾತುರಂಗದಲಿ
ಮರುದಿವಸವವಭೃತವ ನೆರೆ ವಿ
ಸ್ತರಿಸಿದರು ಪನ್ನೀರ ಹೊಂಗೊ
ಪ್ಪರಿಗೆಗಳ ಕುಂಕುಮದ ಘಟವಾಸಕದ ರಚನೆಯಲಿ ೩೧

ಕನಕ ಮಣಿಗಳ ತೊಟ್ಟು ಜಾಜಿಯ
ನನೆಯ ಆದಳಿಕೆಯಲಿ ಮದನನ
ಮೊನೆಯ ಖಾಡಾಖಾಡಿ ಖಾತಿಯರೈದೆ ಹೊಯ್ ಹೊಯ್ದು
ದನುಜಹರನರಸಿಯರು ಕುಂತಿಯ
ತನಯರರಸಿಯರೊಡನೆ ಮತ್ಸ್ಯನ
ವನಿತೆಯರು ಪಾಂಚಾಲಿನಿಯರೋಕುಳಿಯನಾಡಿದರು ೮೨

ಧರಣಿ ನೆನೆದುದು ಗಂಧ ರಸ ಕ
ಸ್ತೂರಿಯ ಪನ್ನೀರುಗಳ ಹೊನಲೊಡೆ
ವೆರಸಿ ದೆಸೆ ಕಂಪಿಟ್ಟುದಂಬುಧಿ ನವ ತುಷಾರದಲಿ
ತರಣಿ ಪರಿಮಳಿಸಿದನು ಪವನನ
ಸುರಭಿತನವಚ್ಛರಿಯೆ ಗಗನದ
ಪರಮ ಸೌರಭಕಲಸಿ ಕೊಂಡುದು ಸಕಲ ಸುರಕುಲವ ೮೩

ಬಳುವಳಿಯ ನಿಖಿಳಾವನೀ ಮಂ
ಡಲವನನುಪಮ ಕೋಶ ವರ್ಗದ
ಲಲನೆಯರ ಗಜ ವಾಜಿ ರಥ ಪಾದಾತಿ ಗೋವ್ರಜವ
ಅಳಿಯಗಿತ್ತು ವಿರಾಟ ನೃಪ ಯದು
ಕುಲವನಾ ಪಾಂಚಾಲ ಚೈದ್ಯಾ
ವಳಿಯನುತ್ತಮ ವಸ್ತು ವಾಹನದಿಂದ ಮನ್ನಿಸಿದ ೮೪

ಆದುದಭಿಮನ್ಯುವಿನ ಮದುವೆ ಮ
ಹಾ ದಯಾಂಬುಧಿ ಕೃಷ್ಣ ರಾಯನ
ಪಾದ ದರುಶವಾಗಲಿಮ್ಮಡಿಸಿತ್ತು ನಮ್ಮುದಯ
ಮೇದಿನಿಯ ನಾವೊತ್ತೆಯಿಟ್ಟೆವು
ಕಾದುಕೊಂಡೆವು ಸತ್ಯವನು ಮೇ
ಲಾದುದನು ನೀ ಕರುಣಿಸೆಂದರು ವೀರ ನರಯಣನ ೮೫

ಇತಿ ಶ್ರೀಮದಚಿಂತ್ಯ ಮಹಿಮ ಗದುಗಿನ ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪರಿಪುಷ್ಟ ವಚಃ ಷಟ್ಪದೀ ನಿಕಾಯ
ಶ್ರೀಮತ್ಕುಮಾರವ್ಯಾಸ ಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ವಿರಾಟಪರ್ವಂ ಸಮಾಪ್ತಮಾದುದು.

ಉದ್ಯೋಗ ಪರ್ವ

ಮೊದಲನೆಯ ಸಂಧಿ

ಸೂ. ನಂಬಿದವರಿಗೆ ತನ್ನ ತೆತ್ತಿಹ
ನೆಂಬ ಬಿರುದನು ಮೆರೆದು ಭಕ್ತಕು
ಟುಂಬಿ ಸಾರಥಿಯಾದನೊಲಿದರ್ಜುನಗೆ ಮುರವೈರಿ

ಕೇಳು ಜನಮೇಜಯ ಧರಿತ್ರೀ
ಪಾಲ ಕುಂತೀ ತನಯರುನ್ನತ
ದೇಳಿಗೆಯನೇನೆಂಬೆನೈ ಕಾರುಣ್ಯ ಸಿಂಧುವಲ
ಶ್ರೀಲತಾಂಗಿಯ ರಮಣನಿನಿಬರೊ
ಳಾಳೊಡೆಯನೆಂದೆಂಬ ಭೇದವ
ಬೀಳುಕೊಟ್ಟೇ ನಡೆಸುತಿರ್ದನು ತನ್ನ ಮೈದುನರ ೧

ಹೋಲಿಕೆಗೆ ಬಾಯ್ವಿಡುವ ವೇದದ
ತಾಳಿಗೆಗಳೊಣಗಿದವು ಘನತೆಯ
ಮೇಲೆ ತನ್ನದು ಘನತೆಯೆಂಬುದನತ್ತ ಬೇರಿರಿಸಿ
ಕಾಲಿಗೆರಗುವನಾ ಯುಧಿಷ್ಠಿರ
ನೇಳಲೊಡನೇಳುವನು ಕೃಷ್ಣನ
ಲೀಲೆಯನುಪಮವೆಂದು ವೈಶಂಪಾಯ ಮುನಿ ನುಡಿದ ೨

ಒಂದು ದಿನ ವೊಡ್ಡೋಲಗಕ್ಕೈ
ತಂದನಖಿಳಾವನಿಯ ರಾಯರ
ಮಂದಿಯಲಿ ಮುರವೈರಿ ನುಡಿದನು ರಾಜಮಂತ್ರವನು
ಹಿಂದೆ ಜೂಜಿನ ವಿಲಗದಲಿ ಮನ
ನೊಂದರಿವರಡವಿಯಲಿ ಧರೆಗಿ
ನ್ನೆಂದು ಸೇರುವರೇನು ಹದನೀ ಪಾಂಡು ತನಯರಿಗೆ ೩

ದೇವ ನೀನೇ ಬಲ್ಲೆ ನಿಮ್ಮಯ
ಭಾವನೀ ಧರ್ಮಜನ ಬಹುಮಾ
ನಾವಮಾನದ ಹೊರಿಗೆ ನಿನ್ನದು ಹರಣ ಭರಣವನು
ನೀವು ಬಲ್ಲಿರಿ ಕಾಲಲೊದೆದುದ
ನೋವಿ ತಲೆಯಲಿ ಹೊತ್ತು ನಡೆಸುವ
ಡಾವು ಬಲ್ಲೆವು ಜೀಯಯೆಂದನು ದ್ರುಪದ ಭೂಪಾಲ ೪

ಕಳುಹುವುದು ಶಿಷ್ಟರನು ಧರಣೀ
ತಳವ ಬೇಡಿಸುವಲ್ಲಿ ಸಾಮವ
ಬಳಸುವುದು ಭೀಷ್ಮಾದಿಗಳ ಕಟ್ಟುವುದು ವಿನಯದಲಿ
ತಿಳಿವುದಾತನ ನೆಲೆಯನಲ್ಲಿಂ
ಬಳಿಕ ನಯವಿಲ್ಲೆಂದಡಾಹವ
ದೊಳಗೆ ಕೈದೋರುವುದು ಮತವೆಂದನು ಮುರಧ್ವಂಸಿ ೫

ಎಲೆ ಮರುಳೆ ಮುರವೈರಿ ಕೌರವ
ರೊಲಿಯರೀ ಹದನನು ಯುಧಿಷ್ಠಿರ
ನಿಳೆಯ ಸೋತನು ಜೂಜುಗಾರರ ಮೇರೆ ಮಾರ್ಗದಲಿ
ನೆಲನನೊಡ್ಡಲಿ ಮತ್ತೆ ಗೆಲಿದೇ
ಕೊಳಲಿ ಮೇಣ್ ಕಾದಲಿ ಸುಯೋಧನ
ನೊಳಗೆ ತಪ್ಪಿಲ್ಲೆಂದು ನುಡಿದನು ನಗುತ ಬಲರಾಮ ೬

ಲೇಸನಾಡಿದೆ ರಾಮ ಬಳಿಕೇ
ನಾ ಸುಯೋಧನನಧಮನೇ ನೀ
ನೀಸನೇರಿಸಿಕೊಂಡು ನುಡಿವಾ ಮತ್ತೆ ಕೆಲಬರಲಿ
ಆಸುರದ ಕತ್ತಲೆಯ ಬೀಡು ಮ
ಹಾ ಸಹಾಯವು ಗೂಗೆಗಳಿಗುಪ
ಹಾಸವೇ ದಿಟವೆಂದು ಸಾತ್ಯಕಿ ನಗುತ ಖಚಿತಿಗೊಂಡ ೭

ಬಲನ ಮಾತೇನಿವರ ಭಾಗ್ಯದ
ನೆಲೆಯೆ ಘಡ ಕೌರವರ ಶತಕದ
ತಲೆಗೆ ತಾ ವೀಳೆಯವನೆಲೆ ಕುಂತೀ ಕುಮಾರಕನೆ
ನೆಲನನಲಗಿನ ಮೊನೆಯಲಲ್ಲದೆ
ಮೆಲುನುಡಿಯ ಸಾಮದಲಿ ಗೀಮದ
ಲಿಳೆಯ ಕೊಂಬರೆ ಧರೆಯೊಳಧಿಕ ಕ್ಷತ್ರಿಯಾತ್ಮಜರು ೮

ಕಾದಿ ಸಾವುದು ಮೇಣು ರಿಪು ಭಟ
ನಾದವನ ನೆತ್ತಿಯಲಿ ಸಬಳವ
ಕೋದು ಕೊಂಬುದು ನೆಲನನಿದು ಕ್ಷತ್ರಿಯರ ಮಕ್ಕಳಿಗೆ
ಮೇದಿನಿಯ ಬೇಡುವೊಡೆ ಮಟ್ಟಿಯ
ತೇದು ಹಣೆಯಲಿ ಬಡಿದು ದರ್ಭೆಯ
ಕೋದು ಸ್ವಸ್ತಿಯ ಹಾಕುವುದು ಹಾರುವರ ಮಕ್ಕಳಿಗೆ ೯

ಎನಲು ನಕ್ಕನು ದ್ರುಪದನಿದು ನ
ಮ್ಮನುಮತವು ಕಾಳಗದೊಳಲಗಿನ
ಮೊನೆಯೊಳಲ್ಲದೆ ಮಹಿಯ ಕೊಡುವರೆ ಕೌರವೇಶ್ವರರು
ವಿನುತ ಸಾತ್ಯಕಿ ಕೇಳು ನೆಲೆಯಿದು
ಜನಪರನ್ನಿಬರೊಬ್ಬ ದೂತನ
ವಿನಯದಲಿ ಕಳುಹುವುದು ಸಾಮವ ಬೆಳೆಸಿ ನೋಡುವುದು ೧೦

ವಿಹಿತವಿದು ಪಾಂಚಾಲಕನ ಮತ
ವಹುದು ರಾಯರಿಗಟ್ಟುವುದು ವಿ
ಗ್ರಹವ ಸೂಚಿಸಿ ಕರೆದುಕೊಂಬುದು ಬೇಹ ಭೂಭುಜರ
ಬಹಳ ಸಂವರಣೆಯಲಿ ರಣ ಸ
ನ್ನಿಹಿತವಾಗಿಹುದಿತ್ತಲತ್ತಲು
ಮಹಿಯ ಬೇಡಿಸ ಕಳುಹುವುದು ತೆರನೆಂದನಸುರಾರಿ ೧೧

ಮದುವೆಗೋಸುಗ ಬಂದೆವಾವಿ
ನ್ನಿದರ ಮೇಲಣ ರಾಜಕಾರ್ಯದ
ಹದನನಟ್ಟುವುದರುಹುವುದು ಬಹೆವಾವು ಕರೆಸಿದೊಡೆ
ಹದುಳವಿಹುದೆಂದಸುರರಿಪು ಕರು
ಣದಲಿ ಕುಂತೀಸುತರನಾ ದ್ರೌ
ಪದಿಯನಭಿಮನ್ಯುವ ಸುಭದ್ರೆಯು ಹರಸಿ ಬೀಳ್ಕೊಂಡ ೧೨

ಕೂಡಿಕೊಂಡಿಹುದಿವರ ಮಕ್ಕಳ
ನೋಡಲಾಗದು ಹೆಚ್ಚು ಕುಂದನು
ನಾಡ ಬೇಡಲು ಬುದ್ಧಿವಂತರನಲ್ಲಿಗಟ್ಟುವುದು
ಕೂಡೆ ಶೋಧಿಸಿ ಸೆಜ್ಜೆಯಲಿ ಮೈ
ಗೂಡಿಯಾರೋಗಣೆಗೆಳಲಿ ಕೈ
ಮಾಡಿ ಬೆರೆಸಿಹುದೆಂದು ದ್ರುಪದ ವಿರಾಟರಿಗೆ ನುಡಿದ ೧೩

ಎಂದು ಕಳುಹಿಸಿಕೊಂಡು ನಾರೀ
ವೃಂದ ಯದುಕುಲ ಸಹಿತ ದೇವ ಮು
ಕುಂದ ಬಿಜಯಂಗೈದು ಹೊಕ್ಕನು ದ್ವಾರಕಾಪುರವ
ಒಂದು ದಿನದಾಲೋಚನೆಯು ನೆಲೆ
ಯಿಂದ ಕರೆದು ಪುರೋಹಿತನ ನಲ
ವಿಂದ ಕಳುಹಿದ ದ್ರುಪದನಾ ಕೌರವನ ಪಟ್ಟಣಕೆ ೧೪

ಓಲೆಯುಡುಗೊರೆ ಸಹಿತ ಧರಣೀ
ಪಾಲರಿಗೆ ಪಾಂಡವರು ಶಿಷ್ಟರು
ಕಾಳಗಕೆ ನೆರವಾಗಲೋಸುಗ ಕರೆದರಲ್ಲಲ್ಲಿ
ಆಳು ಕುದುರೆಯ ಕೂಡಿ ದೆಸೆಗಳ
ಮೂಲೆಯರಸುಗಳೆಲ್ಲ ಕುರು ಭೂ
ಪಾಲನಲ್ಲಿಗೆ ಕೆಲರು ಕೆಲಬರು ಪಾಂಡು ತನಯರಿಗೆ ೧೫

ಧರಣಿಯೆಡೆಗೆಡೆ ರಾಯ ಮೋಹರ
ತೆರಳಿತಿಬ್ಬರು ರಾಯರಿಗೆ ಕೈ
ನೆರವುದೋರಲು ಕವಿದು ಬಂದುದು ಕಾಣೆನಳತೆಗಳ
ಅರಿಗಳತಿ ಹೆಚ್ಚಿದರು ಮೈಮರೆ
ದಿರಲು ಧರಣಿಗಮಾನ್ಯವಹುದಿ
ನ್ನುರವಣಿಸಬೇಕೆಂದು ದುರ್ಯೋಧನನು ಚಿಂತಿಸಿದ ೧೬

ಹದನನಾಪ್ತರಿಗರುಹಿದನು ಗು
ಪ್ತದಲಿ ಕೃಷ್ಣನನೊಳಗು ಮಾಡುವ
ಮುದದಿ ಬಂದನು ಕೌರವೇಂದ್ರನು ದ್ವಾರಕಾಪುರಿಗೆ
ಇದನು ಭೇದಿಸಿ ಬೇಹಿನವರರು
ಹಿದರು ಕುಂತೀ ಸುತರಿಗತಿ ವೇ
ಗದಲಿ ಧರ್ಮಜನಳುಕಿ ಕಳುಹಿದನಿಂದ್ರನಂದನನ ೧೭

ಬೀಳುಕೊಂಡರ್ಜುನನನು ಲಕ್ಷ್ಮೀ
ಲೋಲನಲ್ಲಿಗೆ ಬರುತ ಕಂಡನು
ಲೀಲೆಯಲಿ ನರ್ತಿಸುವ ನವಿಲನು ಬನದೊಳಡ ಹಾಯ್ವು
ಮೇಲೆ ಹಂಗನ ಬಲನ ಹರಿಣೀ
ಜಾಲದೆಡನನು ತಿದ್ದುವಳಿಯ ವಿ
ಶಾಲ ಶಕುನವನಾಲಿಸುತ ಹರುಷದಲಿ ನಡೆತಂದ ೧೮

ಮೊರೆದು ಮಿಂಗೆ ತಲೆಯೊತ್ತಿ ತೆರೆ ಮೈ
ಮುರಿದು ಘುಳುಘುಳು ಘುಳಿತ ಘನ ನಿ
ಷ್ಠುರ ನಿನಾದದ ಗಜರು ಗಾಢಿಸಿ ಬಹಳ ಲಹರಿಯಲಿ
ತೆರೆ ತೆರೆಯು ತಿವಿದೆದ್ದು ಗಗನವ
ನಿರದೊದೆದು ವಿತಳಕ್ಕೆ ಸುಳಿ ಭೋಂ
ಕರಿಸಿ ಸಾಗರನುಬ್ಬುಗವಳವ ಕೊಂಡವೊಲು ಕುಣಿದ ೧೯

ಪೂತು ಮಝು ಸಾಗರನ ಬಿಗುಹು ಮ
ಹಾತಿಶಯವೈ ಯಿವನನಂಜಿಸ
ಲಾತಗಳು ಮರ್ಮಿಗಳು ಬೆಟ್ಟವನೊಟ್ಟಿ ನೆತ್ತಿಯಲಿ
ಈತ ನಮಗಂಜುವನೆಯೆನುತ ವಿ
ಧೂತರಿಪು ಬಲ ಮುಂದೆ ಕಂಡನು
ಪಾತಕದ ಹೆಡತಲೆಯ ದಡಿಯನು ದ್ವಾರಕಾಪುರವ ೨೦

ಅಟ್ಟಿ ಬಳಲಿದ ಶ್ರುತಿಗೆ ಹರಿ ಮೈ
ಗೊಟ್ಟ ಠಾವಿದು ತಾಪಸರು ಜಪ
ಗುಟ್ಟಿ ಜಿನುಗಿದಡವರನುಜ್ಜೀವಿಸಿದ ಠಾವಿದಲ
ಹುಟ್ಟು ಸಾವಿನ ವಿಲಗ ಜೀವರ
ಬಿಟ್ಟ ಠಾವಿದು ಕಾಲ ಕರ್ಮದ
ಘಟ್ಟು ಮುರಿವಡೆದೋಡಿದೆಡೆಯಿದು ಶಿವ ಶಿವಾಯೆಂದ ೨೧

ಪರಮ ನಾರಾಯಣ ಪರಾಯಣ
ನಿರವೆ ಪರತರವೆಂದು ಮುರಹರ
ಬರೆದ ಠಾವಿದು ಮುಕುತಿಯಿದರೊಳು ಕರತಳಾಮಲಕ
ಭರಿತ ಬೊಮ್ಮದ ಸುತ್ತುಗೊಳಸನು
ಸರಿದ ಠಾವೀ ತರ್ಕ ತಂತ್ರದ
ತರದ ಯುಕುತಿಗೆ ತೊಳಸುಗೊಳ್ಳದ ಠಾವಲಾಯೆಂದ ೨೨

ಹೊಗಳುತರ್ಜುನನಸುರರಿಪುವಿನ
ನಗರಿಗೈತಂದರಮನೆಯ ಹೊಗ
ಲಗಧರನು ಮಂಚದಲಿ ನಿದ್ರಾಂಗನೆಯ ಕೇಳಿಯಲಿ
ಸೊಗಸು ಮಿಂಗಲರೆದೆರೆದ ಲೋಚನ
ಯುಗಳ ಸಮತಳಿಸಿದ ಸುಷುಪ್ತಿಯ
ಬಿಗುಹಿನಲಿ ಪರಮಾತ್ಮನೆಸೆದನು ಭ್ರಾಂತಿಯೋಗದಲಿ ೨೩

ಮುಕುಳಕರಪುಟನಾಗಿ ಭಯಭರ
ಭಕುತಿಯಲಿ ಕಲಿಪಾರ್ಥನಬುಜಾಂ
ಬಕನನೆಬ್ಬಿಸಲಮ್ಮದೊಯ್ಯನೆ ಚರಣ ಸೀಮೆಯಲಿ
ಅಕುಟಿಲನು ಸಾರಿದನು ಬಳಿಕೀ
ವಿಕಳ ದುರ್ಯೋಧನನು ನಿಗಮ
ಪ್ರಕರ ಮೌಳಿಯ ಮೌಳಿಯಂತ್ರಲು ಸಾರ್ದು ಮಂಡಿಸಿದ ೨೪

ಇರಲು ನಿಮಿಷದೊಳಸುರರಿಪು ಮೈ
ಮುರಿದನುಪ್ಪವಡಿಸಿದನಿದಿರಲಿ
ಸುರಪತಿಯ ಸೂನುವನು ಕಂಡನು ನಗೆಯ ಮೊನೆ ಮಿನುಗೆ
ತಿರುಗಿ ನೋಡುತ ತಲೆಯ ದೆಸೆಯಲಿ
ಕುರುಕುಲೇಶನನತಿ ವಿಕಾರತೆ
ಯಿರವ ಕಂಡನಿದೇನಿದೇನೆಂದಸುರರಿಪು ನುಡಿದ ೨೫

ವೀಳಯವ ತಾ ಕೊಂಡು ಕುರು ಭೂ
ಪಾಲ ಪಾರ್ಥರಿಗಿತ್ತು ಲಕ್ಷ್ಮೀ
ಲೋಲ ನುಡಿದನು ಉಭಯ ರಾಯರಿಗಿತ್ತ ಬರವೇನು
ಹೇಳಿರೈ ಬರವಘಟಿತವಲಾ
ಮೇಳವೇ ಕಡುಮಾನ್ಯರೆಮ್ಮಾ
ಯಾಲಯಕೆ ಬರಲೇನೆನಲು ಕುರು ರಾಯನಿಂತೆಂದ ೨೬

ಯಾದವರು ಕೌರವರೊಳುಂಟೇ
ಭೇದವಾವಯಿತಂದರೆಮ್ಮೊಳ
ಗಾದ ಲಾಘವವೇನು ನಿಮ್ಮವೊಲಾರು ಸಖರೆಮಗೆ
ಸೋದರರ ಮನ ಕವಡಿದವು ದಾ
ಯಾದ ವಿಷಯದಲಿನ್ನು ಧರಣಿಗೆ
ಕಾದುವೆವು ನಮ್ಮಿಬ್ಬರಿಗೆ ಬಲವಾಗಬೇಕೆಂದ ೨೭

ಕೌರವೇಶ್ವರ ಕೇಳು ಧರಣೀ
ನಾರಿಯನಿಬರಿಗೊಕ್ಕತನವಿ
ದ್ವಾರ ಮೆಚ್ಚಿದಳಾರ ಸಂಗಡ ಪುರಿಯ ಹಾಯಿದಳು
ಭೂರಿ ಮಮಕಾರದಲಿ ನೃಪರು ವಿ
ಚಾರಿಸದೆ ಧರ್ರೆಯೆಮ್ಮದೆಂದೇ
ನಾರಕದ ಸಾಮ್ರಾಜ್ಯಕೈದುವರೆಂದು ಹರಿ ನುಡಿದ ೨೮

ನಾಡಿಗೋಸುಗ ಸೋದರರು ಹೊ
ಯ್ದಾಡಿ ಹರಿಪಂಚಾದರೆಂಬುದ
ನಾಡದಿಹುದೇ ಲೋಕ ಕಮಲಜನುಸಿರಿಹನ್ನೆಬರ
ಬೇಡಕಟ ನಿಮ್ಮೊಳಗೆ ನೀವ್ ಕೈ
ಗೂಡಿ ಬದುಕುವುದೊಳ್ಳಿತಾವ್ ನೆರೆ
ನೋಡಿ ಸಂತಸಬಡುವೆವೆಂದನು ರುಕ್ಮಿಣೀರಮಣ ೨೯

ತಗರೆರಡ ಖತಿಗೊಳಿಸಿ ಬಲುಗಾ
ಳಗವ ನೋಡುವರಂತೆ ನಿಮ್ಮನು
ತೆಗೆತೆಗೆದು ಕಲಿಮಾಡಿ ಬಿಡುವರು ಖುಲ್ಲರಾದವರು
ನಗುತ ಹೆರೆ ಹಿಂಗುವರು ಪಿಸುಣರು
ಬಗುಳಿದವದಿರು ಬಳಿಕ ಕಡೆಯಲಿ
ಹೊಗುವಿರೈ ನೀವಿಬ್ಬರಪಕೀರಿತಿಯ ಹಾದರಕೆ ೩೦

ಅವಧರಿಸು ಮುರವೈರಿ ಧರ್ಮ
ಶ್ರವಣಕೋಸುಗ ಬಾರೆವಾವ್ ಪಾ
ರ್ಥಿವರ ಪಂಥದ ಕದನ ವಿದ್ಯಾಕಾಮುಪೆಮಗಾಯ್ತು
ನಿವಗೆ ನಾವಿತ್ತಂಡ ಸರಿ ಪಾಂ
ಡವರಿಗೆಯು ಮನದೊಲವಿನಲಿ ಕೌ
ರವರಿಗೆಯು ಬಲವಾಗಬೇಕೆಂದನು ಸುಯೋಧನನು ೩೧

ಎನಲು ತಂಬುಲ ಸೂಸೆ ನಗುತ
ರ್ಜುನನ ನೋಡಿದನಸುರರಿಪು ನಿ
ನ್ನನುವ ಹೇಳೈ ಪಾರ್ಥಯೆನೆ ತಲೆವಾಗಿ ಕೈಮುಗಿದು
ಎನಗೆ ಮತ ಬೇರೇನು ದುರಿಯೋ
ಧನನ ಮತವೇ ನನ್ನ ಮತ ನಿ
ಮ್ಮನುನಯವೆ ನಯವೆಮ್ಮೊಳೀ ಸ್ವಾತಂತ್ರ್ಯವಿಲ್ಲೆಂದ ೩೨

ಆದಡಾವಿಹೆವೊಂದು ಕಡೆಯಲಿ
ಕಾದುವವರಾವಲ್ಲ ಬಲನೊಳು
ಯಾದವರು ಕೃತವರ್ಮ ನಾರಾಯಣ ಮಹಾಸೇನೆ
ಕಾದುವವರಿವರೊಂದು ದೆಸೆಯೆರ
ಡಾದುದಿವರೊಳು ಮೆಚ್ಚಿದುದ ನೀ
ನಾದರಿಸಿ ವರಿಸೆಂದು ಪಾರ್ಥಂಗಸುರರಿಪು ನುಡಿದ ೩೩

ಮುರಮಥನ ಚಿತ್ತೈಸು ಕೌರವ
ರರಸನತಿ ಸಿರಿವಂತನಿದ ಸಂ
ತರಿಸಲಾಪನು ಬಹಳ ಯಾದವ ಸೈನ್ಯ ಸಾಗರವ
ಧರೆಯ ಸಂಪದವಿಲ್ಲದಡವಿಯ
ತಿರುಕರಾವಿನಿಬರನು ಸಲೆ ಸಂ
ತರಿಸಲಾಪೆವೆ ಕೃಷ್ಣ ನೀನೇ ಸಾಕು ನಮಗೆಂದ ೩೪

ನಾವು ಬಡವರು ಬಡವರಿಗೆ ದಿಟ
ನೀವೆ ಬೆಂಬಲವೆಂಬ ಬಿರುದನು
ದೇವ ಕೇಳಿದು ಬಲ್ಲೆವೆಂದನು ಪಾರ್ಥ ಕೈಮುಗಿದು
ನೀವು ಸುಖದಲಿ ಪಾಂಡವರನು
ಜ್ಜೀವಿಸುವುದೆಮಗುಳಿದ ಯದು ಭೂ
ಪಾವಳಿಯ ಕೃಪೆ ಮಾಡಬೇಕೆಂದನು ಸುಯೋಧನನು ೩೫

ಮರೆಯ ಮಾತುಗಳೇಕೆ ಪಾಂಡವ
ರೆರಕ ನಿಮ್ಮಲಿ ಹಿರಿದು ಪಾರ್ಥಗೆ
ಮರುಗುವಿರಿ ಹಿರಿದಾಗಿ ಮನಮೆಚ್ಚುಂಟು ನಿಮ್ಮೊಳಗೆ
ಉರುವ ಕಾರ್ಯಕೆ ಕಡೆಯಲಾವೇ
ಹೊರಗು ಸಾಕಂತಿರಲಿ ನೀ ಹೊ
ಕ್ಕಿರಿಯಲಾಗದು ಕೃಷ್ಣಯೆಂದನು ಕೌರವರ ರಾಯ ೩೬

ಮೊಲೆಯನುಂಬಂದೊಬ್ಬ ದನುಜೆಯ
ಹಿಳಿದೆವೊದೆದೆವು ಶಕಟನನು ತನು
ಗಳೆದೆ ಧೇನುಕ ವತ್ಸ ನಗ ಹಯ ವೃಷಭ ಭುಜಗರನು
ಬಲುಗಜವ ಮಲ್ಲರನು ಮಾವನ
ನೆಳೆದು ಮಾಗಧ ಬಲವ ಬರಿ ಕೈ
ದಳಿಸಿದೆವು ದಾನವರ ಹಿಂಡಿದೆವಾಹವಾಗ್ರದಲಿ ೩೭

ಕಾಲಯವನನ ದಂತವಕ್ರನ
ಸೀಳಿದೆವು ಮುರ ನರಕ ಕುಂಭನ
ಸಾಲುವನ ಪೌಂಡ್ರಕನ ಡಿಬಿಕನ ಹಂಸ ಮೋಹರವ
ಕಾಳಗದೊಳಿಟ್ಟೊರಸಿ ಬಾಣನ
ತೋಳ ತರಿವಂದಾಯ್ತು ಧಾಳಾ
ಧೂಳಿಯಾಹವವಿಂದುಮೌಳಿಯೊಳೆಮಗೆ ಮುಳಿಸಿನಲಿ ೩೮

ಹಸುಳೆತನ ಮೊದಲಾಗಿ ಬಲು ರ
ಕ್ಕಸರೊಡನೆ ತಲೆಯೊತ್ತಿ ರಣದಾ
ಯಸವ ಸೈರಿಸಿ ಹೊಯ್ದು ಕೊಂದೆವು ಕೋಟಿ ದಾನವರ
ಮಿಸುಕಲಾರೆವು ಚಕ್ರ ಭಂಡಾ
ರಿಸಿತು ಮುನ್ನಿನ ಜವ್ವನದ ಬಲ
ಮಸುಳಿತಾವುಂಡಾಡಿ ಭಟ್ಟರು ನೃಪತಿ ಕೇಳೆಂದ ೩೯

ಎನಲು ಕರ ಲೇಸೆಂದು ಮುರಿಯೋ
ಧನನು ಕಳುಹಿಸಿಕೊಂಡು ಬಲರಾ
ಮನನು ಕೃತವರ್ಮನನು ಕಂಡನು ನಿಖಿಳ ಯಾದವರ
ವಿನುತಬಲ ಸಹಿತೊಲವಿನಲಿ ಹ
ಸ್ತಿನಪುರಿಗೆ ಹಾಯಿದನು ಬಳಿಕೀ
ದನುಜರಿಪು ನಸು ನಗುತಲಿಂತೆಂದನು ಧನಂಜಯಗೆ ೪೦

ಸುರಗಿಯನು ಬಿಸುಟೊರೆಯನಂಗೀ
ಕರಿಸಿದುಂದದಲಾಹವದ ಧುರ
ಭರದ ಯಾದವ ಬಲವನೊಲ್ಲದೆ ಮಂದ ಮತಿಯಾಗಿ
ಮರುಳೆ ಕಾದದ ಕಟ್ಟದೆಮ್ಮನು
ಬರಿದೆ ಬಯಸಿದೆಯಿದನು ಕೇಳ್ದೊಡೆ
ಮರುಳುಗುಟ್ಟದೆ ಮಾಣ್ಬರೇ ನಿಮ್ಮಣ್ಣ ತಮ್ಮದಿರು ೪೧

ಎನಲು ಗಹಗಹಿಸಿದನಿದಾರಿಗೆ
ಮನವ ಕದ್ದಾಡುವಿರಿ ನಿಜ ಶಿ
ಷ್ಯನಲಿ ನಾಟಕದಿಂದ್ರಜಾಲವೆ ನಿಮ್ಮ ಗರುಡಿಯಲಿ
ಎನಗೆ ಶ್ರಮವುಂಟದು ನಿಲಲಿ ಯೆ
ನ್ನನುಜರಗ್ರಜರರಿಯರೇ ನಿ
ಮ್ಮನುಪಮಿತ ಮಹಿಮಾವಲಂಬವನೆಂದನಾ ಪಾರ್ಥ ೪೨

ನಾವು ಬರಿಗೈಯವರು ಬರಲೆಮ
ಗಾವುದಲ್ಲಿಯ ಕೆಲಸ ಉಂಡುಂ
ಡಾವು ಕುಳ್ಳಿಹರಲ್ಲ ಹಂಗಾಗಿರೆವು ಕದನದಲಿ
ದೇವನೆಂದೇ ನೀವು ಬಗೆವಿರಿ
ದೇವತನ ನಮ್ಮಲ್ಲಿ ಲವವಿ
ಲ್ಲಾವು ಬಲ್ಲೆವು ಬಂದು ಮಾಡುವದೇನು ಹೇಳೆಂದ ೪೩

ದೇವ ಮಾತ್ರವೆ ನೀವು ದೇವರ
ದೇವರೊಡೆಯರು ಹೊಗಳುವರೆ ವೇ
ದಾವಳಿಗಳಳವಲ್ಲ ಸಾಕಾ ಮಾತದಂತಿರಲಿ
ನಾವು ಭಕುತರು ಭಕುತ ಭೃತ್ಯರು
ನೀವು ಸಾರಥಿಯಾಗಿ ಭೃತ್ಯನ
ಕಾವುದೆಂದರ್ಜುನನು ಹಣೆ ಚಾಚಿದನು ಹರಿಪದಕೆ ೪೪

ಎನಲು ನಗುತೆತ್ತಿದನು ಸಾರಥಿ
ತನವ ಕೈಕೊಂಡನು ಕೃಪಾಳುವಿ
ನನುನಯವ ನಾನೆತ್ತ ಬಲ್ಲೆನು ಭೃತ್ಯವರ್ಗದಲಿ
ತನಗಹಂಕೃತಿಯಿಲ್ಲ ವೈರೋ
ಚನಿಯ ಪಡಿಹಾರಿಕೆ ಕಿರೀಟಿಯ
ಮನೆಯ ಬಂಡಿಯ ಬೋವನಾದನು ವೀರನಾರಯಣ ೪೫

ಎರಡನೆಯ ಸಂಧಿ

ಸೂ. ಬಂದು ಕಂಡನು ಸಂಜಯನು ಯಮ
ನಂದನನನಲ್ಲಿಂದ ಮರಳಿದು
ಬಂದು ಕೌರವ ನೃಪತಿಗರುಹಿದನವರ ಮಾತುಗಳ

ಎಲೆ ಪರೀಕ್ಷಿತ ತನಯ ಕೇಳು
ಮ್ಮಳಿಸಿದನು ಯಮಸೂನು ಮುರರಿಪು
ಫಲುಗುಣಗೆ ಮೈಗೊಡುವನೋ ಕೌರವರಿಗೊಳಗಪನೊ
ತಿಳಿಯಲರಿದೆನುತಿರಲು ಬಲಗ
ಣ್ಣಲುಗಿತಿದಿರೊಳು ಕೈಯ ಗುಡಿಯಲಿ
ಸುಳಿದನೊಬ್ಬನು ಬಹಳ ಮಾರ್ಗಶ್ರಮದ ಭಾರದಲಿ ೧

ಇದಿರುಗೊಳ್ಳೇಳರಸ ಕಟ್ಟಿಸು
ಮುನದಿ ಗುಡಿಯನು ರಣದೊಳಹಿತರ
ಸದೆದೆ ಹೋಗಿನ್ನೇನು ಸರಿಯೇ ಸುರರು ಗಿರರುಗಳು
ಪದವನರಸಿದರಾಳಿಗೊಂಡನು
ಸದಮಲಶ್ರುತಿ ತತಿಯನೆಂಬ
ಗ್ಗದ ಮಹಾ ಪರದೈವ ಬಿಜಯಂಗೈವುತಿದೆಯೆಂದ ೨

ವ್ಯಥಿತವಾಯಿತು ವೈರಿಬಲ ಸಂ
ಪ್ರಥಿತ ಸಾಹಸನಾದೆ ನೀನೆನೆ
ಶಿಥಿಲ ಸಂಶಯನಂಗಚಿತ್ತವನಿತ್ತನಾತಂಗೆ ೩

ಉಕ್ಕಿ ವಿಸಟಂಬರಿವ ಹರುಷದ
ತೆಕ್ಕೆಯಲಿ ಕೈಗೊಡುವ ನೃಪತಿಗ
ಳಿಕ್ಕಲಿಸೆ ಹೊರವಂಟನರಸನು ಸಕಲದಳ ಸಹಿತ
ಮಿಕ್ಕು ಬರೆ ಬರೆ ಕೃಷ್ಣನನು ಕಂ
ಡೊಕ್ಕನೊಡಲನು ಚರಣದಲಿ ಸಾ
ಕಕ್ಕಜವಿದೇನೆನುತ ನೆಗಹಿದನಂದು ಧರ್ಮಜನ ೪

ಕಥೆಯ ನಿನ್ನೊಡ ಹುಟ್ಟಿದನ ಸಾ
ರಥಿತನವ ಕೈಕೊಂಡನಿನ್ನು
ಪೃಥಿವಿ ನಿನ್ನದು ರಾಣಿವಾಸವು ಚಿಂತೆ ಬೇಡಿದಕೆ

ಪರಕೆ ಪರತರ ವಸ್ತುವನು ಗೋ
ಚರಿಸಿದೆವಲೈ ಮುನಿಜನಂಗಳ
ವರ ಸಮಾಧಿಗೆ ಸಮಯವಿಲ್ಲದ ದೇವ ನಮಗೊಲಿದೈ
ಕರುಣಿ ಬಿಜಯಂಗೈದೆಯೆನೆ ಮುರ
ಹರನು ನಗುತಿಂತೆಂದ ನಾವೀ
ನರನ ಸಾರಥಿಯಲ್ಲದೆಲ್ಲಿಯ ವಸ್ತು ತಾನೆಂದ ೫

ಬಯಲಿಗೆಮ್ಮನು ನಾಚಿಸದೆ ಪಾ
ಳೆಯಕೆ ನಡೆತಂದಸುರರಿಪು ಸೇ
ನೆಯನು ಕೈವೀಸಿದನು ಬಂದನು ರಾಜಮಂದಿರಕೆ
ನಿಯತವಿತ್ತಲು ಕೇಳು ಜನಮೇ
ಜಯ ಮಹೀಪತಿ ಧರ್ಮಸುತನೋ
ಲೆಯ ಹದನನರಿದಂತೆ ಶಲ್ಯ ನೃಪಾಲ ಹೊರವಂಟ ೬

ಮೇಳವಿಸಿ ಹೊರವಂಟನಗಣಿತ
ದಾಳು ಕುದುರೆಯ ಕೂಡಿ ಬರುತಿರೆ
ಕೇಳಿದನು ಕುರುರಾಯನಾ ಮಾದ್ರಾಧಿಪನ ಬರವ
ಆಳೊಳಗ್ಗಳನದಟ ಶಲ್ಯ ನೃ
ಪಾಲಕನ ತಿರುಹಿದೊಡೆ ಗೆಲುವುದು
ಕಾಳಗವು ನಮಗೆಂದು ನಿಶ್ಚೈಸಿದನು ಮಂತ್ರದಲಿ ೭

ಎಂದಖಿಳ ವಸ್ತುಗಳ ಜೋಡಿಸಿ
ಮುಂದೆ ಪಾಳೆಯ ಬಿಡುವ ಠಾವಿನೊ
ಳೆಂದು ಮಿಗೆ ಮಾಡಿದನು ಗುಡಿ ಗೂಡಾರ ಚೌಕಿಗೆಯ
ಒಂದು ಯೋಜನದಗಲದಲಿ ಹಯ
ವೃಂದ ಗಜಶಾಲೆಗಳ ಪರುಠವ
ದಿಂದ ರಚಿಸಿದ ಕೂಳು ಖಾಣವನಖಿಳ ಮೋಹರಕೆ ೮

ಬಂದು ಬಿಡುವನ್ನೆಬರ ಮುನ್ನಿನ
ಮಂದಿರವ ಹೊಗುವಂತೆ ಶಲ್ಯನ
ಮಂದಿ ಸಂತೋಷದ ಸಮುದ್ರದಿ ಮೂಡಿ ಮುಳುಗಾಡಿ
ಮುಂದೆ ನಡೆಯಲು ಮತ್ತೆ ಮುನ್ನಿನ
ಚಂದದಿಂ ಮನೆ ಮನೆಗಳನು ಸುಖ
ದಿಂದಿರಲು ರಚಿಸಿದನು ಕುರುಪತಿ ಪಯಣ ಪಯಣದಲಿ ೯

ಆರು ನಯದಲಿ ನಮ್ಮಖಿಳ ದಳ
ಭಾರವನು ಸಲೆ ತಡೆದವನು ಕುರು
ವೀರನೋ ಯಮನಂದನನೊ ಮಿಗಿಲಾಗಿ ಮೆಚ್ಚಿದೆನು
ಆರುಮಾಡಲಿಯವರು ಬಂದರೆ
ಹಾರಲೇಕೆನ್ನೊಡಲ ತೆರುವೆನು
ವೀರ ಮೈದೋರಲಿಯೆನುತ ಹೊಯಿಸಿದನು ಡಂಗುರವ ೧೦

ನಗುತ ಕೌರವ ರಾಯನಿವರೋ
ಲಗಕೆ ಬರಲಿದಿರೆದ್ದು ಮುದದಲಿ
ತೆಗೆದು ಬಿಗಿಯಪ್ಪಿದನು ಕುಶಲವನ್ನೆಯ್ದೆ ಬೆಸಗೊಂಡ
ಮಗನೆ ನೀನೇ ರಚಿಸಿದಾತನು
ಬಗೆ ದಣಿಯೆ ಬೇಡುವುದು ತಾ ಹಂ
ಗಿಗನು ನಿನಗೆನೆ ಮಾವ ಬಿನ್ನಹ ಮರಳಿ ನೀವೆಂದ ೧೧

ಎನಗೆ ಬೆಂಬಲವಾಗಿ ಕುಂತೀ
ತನಯರನು ಬಿಡಿ ಮರಳಿ ನೀವ್ ಹ
ಸ್ತಿನಪುರಿಗೆ ತನಗಿತ್ತ ವರವೆನೆ ಶಲ್ಯ ಮನವಳುಕಿ
ತನಯ ಕೈಕೊಂಡೆನು ಯುಧಿಷ್ಠಿರ
ಜನಪನಳಿಯನು ನೀನು ಲೋಗನೆ
ಯೆನಗೆ ನೀವಿತ್ತಂಡ ಸರಿ ನಿಮ್ಮತ್ತ ಬಹೆನೆಂದ ೧೨

ಅಗಲಿದೆನು ಹಲಕಾಲವೈವರ
ಮೊಗವನೀಕ್ಷಿಸಿ ಮರಳುವೆನು ಬಂ
ಧುಗಳ ದರುಶನ ಫಲವಲಾ ಸಂಸಾರ ತರುವಿಂಗೆ
ಮಗನೆ ಸೇನೆಯ ಕೊಂಡು ವಾರಣ
ನಗರಿಗೈದುವುದೆಂದು ಭೂಪನ
ಮಗುಳಿಚಿದನಾ ಶಲ್ಯ ಬಂದನು ಪಾಂಡವರ ಹೊರೆಗೆ ೧೩

ಇದಿರುಗೊಂಡರು ಕಾಣಿಕೆಯನಿ
ಕ್ಕಿದರು ತೆಗೆದಪ್ಪಿದರು ಹಲ ಕಾ
ಲದಲಿ ಹೂಳಿದ ಹರುಷವನು ಕೈಗೊಳಗು ಮಾಡಿದರು
ಮುದದಿನೆಲ್ಲರ ಕುಶಲವನು ಕೇ
ಳಿದನು ದುರಿಯೋಧನಗೆ ಸಿಲುಕಿದ
ಹದನನೆಲ್ಲವ ಹೇಳಿದನು ನಿರ್ವಿಣ್ಣ ಮನನಾಗಿ ೧೪

ಆದಡೇನೆಲೆ ಕಂದ ತಪ್ಪದು
ಮೇದಿನಿಯ ಸಿರಿ ನಿನಗೆ ಸತ್ಯವ
ಕಾದು ಹದಿಮೂರಬುದ ನವೆದಿರಿ ಮುಂದೆ ಲೇಸಹುದು
ಕಾದಿ ವೃತ್ರಾಸುರನ ಮುರಿದಪ
ವಾದದಲಿ ಸಿರಿ ಹೋಗಿ ದುಃಖಿತ
ನಾದನಿಂದ್ರನು ಮತ್ತೆ ಬದುಕಿದ ಶಚಿಯ ದೆಸೆಯಿಂದ ೧೫

ನಹುಷನನು ಕೆಡೆನೂಕಿ ಋಷಿಗಳ
ಮಹಿಮೆಯಲಿ ಸಾಮ್ರಾಜ್ಯದಲಿ ಸ
ನ್ನಿಹಿತನಾದನು ಮತ್ತೆ ದಿವಿಜರ ರಾಯನೊಳಗಾಗಿ
ಅಹಿತರವಗಡಿಸಿದೊಡೆ ಕುಸಿದನು
ಬಹಳ ಲೇಸನು ಬಳಿಕ ಕಂಡನು
ಮಹಿ ನಿನಗೆ ಬೆಸಕೈದು ಬದುಕುವಿರೆಂದನಾ ಶಲ್ಯ ೧೬

ಆದೊಡಾ ಕರ್ಣಂಗೆ ಸಾರಥಿ
ಯಾದಿರಾದೊಡೆ ಸಮರ ಮುಖದಲಿ
ವಾದ ತೇಜೋವಧೆಯ ಮಾಡುವುದವನನವಗಡಿಸಿ
ಕಾದಿ ಕೊಡುವುದು ನಾವು ಗೆಲುವವೊ
ಲಾದರಿಸುವುದು ನಮ್ಮನೆಂದಾ
ಮೇದಿನೀಪತಿ ಶಲ್ಯನನು ಸತ್ಕರಿಸಿ ಕಳುಹಿದನು ೧೭

ಬೀಳುಗೊಂಡನು ಶಲ್ಯನಿತ್ತಲು
ಹೇಳುವರ ಮತಿ ಮುರಿಯೆ ನೋಟಕ
ರಾಲಿ ಝೊಮ್ಮಿಡೆ ಕಾದುವರ ಮನ ಮೂರು ಕವಲಾಗೆ
ಜಾಳಿಗೆಯ ಹೊಗರಲಗಿನುರಿಯ ಚ
ಡಾಳ ನಭದಲಿ ಝಗಝಗಿಸೆ ಹೇ
ರಾಳ ದೊಡ್ಡವಣೆಯಲಿ ಬರುತಿರ್ದುದು ನೃಪವ್ರಾತ ೧೮

ದೆಸೆಗಳೆಂಟರ ಮೂಲೆ ಬಿರಿಯಲು
ಪಸರಿಸಿತು ಹಳೆ ಬೊಮ್ಮಗಹುದೇ
ಹೊಸ ವಿಧಾತ್ರನ ಸೃಷ್ಟಿಯಿದು ಹೆಸರೇನು ಹೊಗಳುವರೆ
ಕುಸಿಯನೇ ಕೂರುಮನು ಭಾರಕೆ
ನಸಿಯನೇ ನಾಗೇಂದ್ರನಾನೆಗ
ಳುಸುರು ಹಮುಳವೆ ನೋಡೆನಲು ಬಂದುದು ನೃಪವ್ರಾತ ೧೯

ಚೋಳ ಪಾಂಡ್ಯರು ಕೇರಳರು ಶಿಶು
ಪಾಲ ನಂದನ ಧೃಷ್ಟಕೇತು ಕ
ರಾಳ ಮಾಗಧ ಚೀನ ಭೋಟಕ ಕರ್ಪರಾದಿಗಳು
ಮೇಲೆ ಮೇಲೈತಂದು ಭೀಮಂ
ಗಾಳುದೋರಿದರಿತ್ತ ಕುರು ಭೂ
ಪಾಲಕನ ಕೂಡಿದರು ಭಗದತ್ತಾದಿ ಭೂಭುಜರು ೨೦

ದ್ರುಪದ ರಾಜ ಪುರೋಹಿತನು ಕುರು
ನೃಪನನಿತ್ತಲು ಬಂದು ಕಂಡನು
ವಿಪುಳಮತಿ ಮಾತಾಡಿದನು ನಿಜ ರಾಜಕಾರಿಯವ
ಕೃಪಣತನದಲಿ ಕೌರವನು ಗುರು
ಕೃಪನ ಭೀಷ್ಮನ ಮತವನೊಲ್ಲದೆ
ಚಪಳ ಕರ್ಣನ ಕೂಡಿ ನಿಶ್ಚೈಸಿದನು ಕಾಳಗವ ೨೧

ನೆನೆದ ಮಂತವನು ತನ್ನ ತಂದೆಯ
ಮನದ ಮಚ್ಚರದೊಳೊರೆದು ಕರ್ಣನ
ನೆನಹಿನಲಿ ಪುಟವಿಟ್ಟು ಶಕುನಿಯ ನೀತಿಯಲಿ ನಿಗುಚಿ
ಅನುಜಮತದಲಿ ವಿಸ್ತರಿಸಿ ವೈ
ದುನನ ನುಡಿಯಲಿ ಬಣ್ಣವಿಟ್ಟನು
ಜನಪನಪಕೀರ್ತ್ಯಂಗನೆಗೆ ತೊಡಿಸಿದನು ಭೂಷಣವ ೨೨

ಹರುಷದಲಿ ಸಂಜಯನನಾಗಳೆ
ಕರೆಸಿ ಕುರುಪತಿ ಬುದ್ಧಿಗಲಿಸಿದ
ನರಿನೃಪರ ಪಾಳಯಕೆ ಹೋಹುದು ನುಡಿವುದುರವಣಿಸಿ
ಧರೆಯ ಬೇಡಿಸಿ ಕಳುಹಿದಿರಿ ಸಂ
ಗರದೊಳಸಿ ಧಾರೆಯಲಿ ಕೊಡುವೆವು
ಬರಿದೆ ಕೊಟ್ಟೊಡಧರ್ಮವೆಂಬುದು ಧರ್ಮಪುತ್ರಂಗೆ ೨೩

ಬೀಳುಕೊಂಡನು ಮಂತ್ರಿ ಪಯಣದ
ಮೇಲೆ ಪಯಣವನೆಯ್ದಿ ಪಾಂಡು ನೃ
ಪಾಲಕರ ಪಾಳೆಯಕೆ ಬಂದನು ರಾಯಗರುಹಿಸಲು
ಕೇಳಿ ಬೀಡಾರವನು ಬೀಯವ
ಹೇಳಿಸಿದನಾ ಮರುದಿವಸದೊ
ಡ್ಡೋಲಗವ ರಚಿಸಿದನು ಕುಂತೀಸುತನು ಠೀವಿಯಲಿ ೨೪

ಹರಿ ವಿರಾಟ ದ್ರುಪದ ಕೈಕೆಯ
ರಿರವು ಬಲವಂಕದಲಿ ವಾಮದ
ಲಿರೆ ವೃಕೋದರ ಫಲುಗುಣಾದಿಗಳಖಿಳ ಮಂತ್ರಿಗಳು
ತರುಣಿಯರು ಪರಿಮಳದ ಜಂಗಮ
ಭರಣಿಯರು ಮನುಮಥ ವಿರಿಂಚನ
ತರುಣಿಯರು ಕುಳ್ಳಿರ್ದರರಸನ ಹಿಂದೆ ಮೋಹರಿಸಿ ೨೫

ಕರಣಿಕರು ಮಾಂತ್ರಿಕರು ವೈದ್ಯರು
ಸರಸ ಕವಿಗಳು ತಾರ್ಕಿಕರು ವರ
ಭರತ ನಿಪುಣರು ಗಾಯಕರು ಪಾಠಕರು ವಾಗ್ಮಿಗಳು
ಕರಿತುರಗ ಶಿಕ್ಷಕರು ಲಕ್ಷಣ
ಪರಿಣತರು ಕೋವಿದರು ಸಾಮಂ
ತರರು ಪರಿಹಾಸಕರು ವೈತಾಳಿಕರು ರಂಜಿಸಿತು ೨೬

ಮಾವುತರು ಚಿತ್ರಕರು ಮಲ್ಲರು
ರಾವುತರು ಶಿಲ್ಪಿಗರು ಮಾಯಾ
ಕೋವಿದರು ಕರ್ಣಾಂಘ್ರಿವಿಕಳರು ಮೂಕ ವಾಮನರು
ದ್ರಾವಕರು ಜೂಜಾಳಿಗಳು ವರ
ದಾವಣಿಯರು ವಿದೇಶಿಗಳು ಮೃಗ
ಜೀವಿಗಳು ಶಾಕುನಿಕರೆಸೆದರು ರಾಜ ಸಭೆಯೊಳಗೆ ೨೭

ಸಾಲ ಮಕುಟದ ರತ್ನರಶ್ಮಿಯ
ದಾಳಿಗೊಂಡುದು ತಮವನಿನ್ನಾ
ಮೇಲುಪೋಗಿನ ಕಿತ್ತ ಖಡ್ಗಕೆ ಪ್ರಭೆಯ ಹಂಗೇಕೆ
ಮೇಲೆ ಕೈದೀವಿಗೆಗಳಧಿಕ
ಜ್ವಾಲೆಯದು ಪುನರುಕ್ತವೆನೆ ಭೂ
ಪಾಲನೋಲಗವೆಸೆದುದಿಂದ್ರನ ಸಭೆಗೆ ವೆಗ್ಗಳಿಸಿ ೨೮

ಕಳಕಳವೆ ಫಡ ಮಾಣು ಮಾಣೆಂ
ದುಲಿಯೆ ಕಂಚುಕಿ ನಿಕರವಂಗೈ
ತಳದ ಬಾಯಲಿ ರಾಯರಿರ್ದರು ಮಣಿದು ಮಕುಟದಲಿ
ನಳಿನನಾಭನು ನಗುತ ಪರ ಮಂ
ಡಲದ ಶಿಷ್ಟನು ಬರಲಿಯೆನೆ ಬಾ
ಗಿಲಲಿ ಕೈದುವ ಕೊಂಡು ಹೊಗಿಸಿದರಂದು ಸಂಜಯನ ೨೯

ಬಂದು ಕಾಣಿಕೆಗೊಟ್ಟು ಹರುಷದ
ಲಂದು ಮೈಯಿಕ್ಕಿದನು ಭಯದಲಿ
ನಿಂದು ನೋಡಿದನೆಡಬಲದ ಮಹಾ ಮಹೀಶ್ವರರ
ಸಂದ ಯಮನೋ ನಿರುತಿಯೋ ಪೌ
ರಂದರನೊ ಪಾವಕನೊ ವರುಣನೊ
ಮಂದಿಯಿದು ಮಾನಸರೆ ಮಾಮಾಯೆನುತ ಬೆರಗಾದ ೩೦

ಸುಳಿದಲೆಯ ಕೆಮ್ಮಾಸೆಗಳ ಮಿಗೆ
ಬೆಳೆದ ಮುಡುಹುಗಳೊಡ್ಡಿದುರದು
ಚ್ಚಳಿತ ರೋಮದ ನೊಸಲ ಡೋರಿಯ ತಲೆಯ ಕಲಿಮುಖದ
ಬಲಿದ ಹುಬ್ಬಿನ ತೋರ ತೋಳಿನ
ಹೊಳೆವಡಾಯುಧ ಮೊಗದ ಹೊಗರಿನ
ಕಲಿಮನದ ಕದನಪ್ರಚಂಡರ ಕಂಡು ಬೆರಗಾದ ೩೧

ಹಳುವದಲಿ ಹನ್ನೆರಡು ವರುಷವು
ತೊಳಲಿದರು ಸಿರಿ ಹೋಗಿ ನಿಮಿಷಕೆ
ನೆಲದ ರಾಯರು ನೆರೆದು ಜೀಯೆನುತಿದೆ ಮಹಾದೇವ
ನಳಿನನಾಭನ ಕರುಣದಳತೆಗೆ
ನಿಲುಕದಿಹುದೇನುಂಟು ಮುರರಿಪು
ಮುನಿದೊಡಾವನ ಮುರಿಯನೆಂದನು ತನ್ನ ಮನದೊಳಗೆ ೩೨

ಇಳುಹಿದನು ಮಹಿಯಲಿ ಮಹೀಪತಿ
ಕಳುಹಿದುಡುಗೊರೆಗಳನು ಭೂಪತಿ
ತಿಲಕ ಧರ್ಮಜನೊಪ್ಪುಗೊಂಡನು ನೃಪನ ಪಾವುಡವ
ಒಲವು ಬೊಪ್ಪನಲುಂಟಲಾ ಮ
ಕ್ಕಳನು ಮರೆಯನು ಲೇಸು ಸಂಜಯ
ತಿಳುಹು ತಾತನ ಕುಶಲವನು ಗಾಂಧಾರಿದೇವಿಯರ ೩೩

ಗುರು ಪಿತಾಮಹ ಗೌತಮರ ಸ
ಚ್ಚರಣಕಮಲಂಗಳಿಗೆ ಕುಶಲವೆ
ಗುರುಸುತನು ಸುಕ್ಷೇಮಿಯೇ ಕುರುರಾಯನಿರವೆಂತು
ಕುರುಪತಿಯ ಸೋದರರು ಮಕ್ಕಳು
ಸರಸಿಜಾನನೆ ಭಾನುಮತಿ ಮಿ
ಕ್ಕರಸಿಯರು ಕರ್ಣಾದಿಗಳು ನಿರ್ವೃತರೆ ಹೇಳೆಂದ ೩೪

ಸುಖಿಗಳಿನಿಬರು ಜೀಯ ನಿಮ್ಮಯ
ನಿಖಿಳ ಬಾಂಧವರನು ಸಹೋದರ
ಸಖ ಸುತಾದಿಗಳನು ಪುರೋಹಿತ ಪೌರ ಪುರಜನದ
ವಂಖ ಸಮುದ್ಭವೆ ಮೊದಲು ಪಂಕಜ
ಮುಖಿಯರನು ಬೆಸಗೊಂಡು ಕಳುಹಿದ
ರಖಿಳ ಕುರು ನಂದನರು ಭೀಷ್ಮ ದ್ರೋಣ ಕೃಪರೆಂಧ ೩೫

ಮುನ್ನ ಭೀಷ್ಮ ದ್ರೋಣ ಗೌತಮ
ರುನ್ನತದ ಕಾರುಣ್ಯದಲಿ ಸಂ
ಪನ್ನ ಸಾಹಸರಾದೆವಾಚರಿಸಿದೆವು ಧರ್ಮವನು
ಇನ್ನು ಧೃತರಾಷ್ಟ್ರಾವನೀಶನು
ತನ್ನ ಮಕ್ಕಳ ಬಾಂಧವ ಪ್ರತಿ
ಪನ್ನತೆಯ ನೆರೆ ಕಾಬನೆಂದನು ಧರ್ಮಸುತ ನಗುತ ೩೬

ಏನು ಬಂದಿಹ ಹದನು ನಿಮ್ಮವ
ರೇನನೆಂದರು ಕುರುಕುಲೇಶ್ವರ
ನೇನನಕ್ಕಟಿ ಬುದ್ಧಿಗಲಿಸಿದನವರ ಮಾತುಗಳ
ಏನುವನು ನೀನುಳುಹದಿರು ವಿನ
ಯಾನುಗತವಾಗಿರಲಿ ಮೇಣ್ ಶೌ
ರ್ಯಾನುಗತವಾಗಿರಲಿ ಬಿನ್ನವಿಸೆಂದನಸುರಾರಿ ೩೭

ನಾಡ ಬೇಡುವರೆಮ್ಮೊಡನೆ ಹೊ
ಯ್ದಾಡುವದು ಸಂಪ್ರತಿಗೆ ಚಿತ್ತವ
ಮಾಡಲಾಗದು ಸಂಧಿ ವೀರ ಕ್ಷತ್ರಿಯರ ಮತವೆ
ಬೇಡುವರೆ ಪಾರ್ಥಿವರು ತಾವದ
ನಾಡಬಾರದು ತಮ್ಮ ಜನನವ
ನೋಡಿ ನುಡಿವರು ಪಾಂಡುಸುತರಲ್ಲೆಂದು ಹೇಳೆಂದ ೩೮

ಮೊದಲಲಮಳ ಬ್ರಹ್ಮಚರ್ಯವು
ಮದುವೆಯಾದುದು ಬಳಿಕ ವನ ವಾ
ಸದಲಿ ವಾನಪ್ರಸ್ಥವೆಂಬಾಶ್ರಮವನಳವಡಿಸಿ
ತುದಿಗೆ ತಾ ಸನ್ಯಾಸವನು ಮಾ
ಡಿದನು ಮಗುಳಳುಪಿದೊಡೆ ರಾಜ್ಯದ
ಪದವಿಗನುಚಿತವಾಯ್ತು ಯಮಜಂಗೆಂದು ಹೇಳೆಂದ ೩೯

ತಳಿತ ಜವ್ವನದುಬ್ಬುಗಳ ಕಳ
ವಳಿಗರರ್ಜುನ ಭೀಮರೆಂಬವ
ರೊಳಗೆ ವೈರವ ಬಿತ್ತಿ ಬೆಳಸುವ ಕೃಷ್ಣ ಹಗೆ ತಮಗೆ
ಉಳಿದ ದ್ರುಪದ ವಿರಾಟರೆಂಬೀ
ಹುಳುಗಳವರಂತೋರೆಗೆಡದರು
ತಿಳಿಯೆ ತಾನೇ ಕಡೆಗೆ ಕೆಡದಿರನೆಂದು ಹೇಳೆಂದ ೪೦

ಸಾಕು ಕೌರವ ನಾಯ ಮಾತನ
ದೇಕೆ ಚಿತ್ತೈಸುವಿರಿ ದೂತನ
ನೂಕು ನೂಕು ಕುಠಾರ ದುರ್ಯೋಧನನನೊಡೆ ಹೊಯಿದು
ಶಾಕಿನಿಯರನು ರಕುತ ವಾರಿಯೊ
ಳೋಕುಳಿಯನಾಡಿಸುವೆ ನಿಲು ತಡ
ವೇಕೆನುತ ಘುಡುಘುಡಿಸಿ ಕಿಡಿಕಿಡಿಯಾದನಾ ಭೀಮ ೪೧

ಬೆಸಸುವುದು ಹಿಂದಾದ ಜೂಜಿನೊ
ಳೆಸೆವ ಜಾಡ್ಯವೆ ಸಾಕು ಧರ್ಮದ
ದೆಸೆಗೆ ನೀವಿನ್ನುತ್ತರಾಯಿ ಸುಯೋಧನನ ಕುಲವ
ದೆಸೆದೆಸೆಯ ದೈವಂಗಳಿಗೆ ಹೆಸ
ರಿಸುವರೆಮ್ಮನು ಕಳುಹೆನುತ ಗ
ರ್ಜಿಸಿದರಂದಭಿಮನ್ಯು ಸಾತ್ಯಕಿ ಭೀಮ ನಂದನರು ೪೨

ಕದಡಿತಾಯಾಸ್ಥಾನ ಕಲ್ಪಾಂ
ತದ ಮಹಾ ಸಿಡಿಲಂತೆ ವೀರರು
ಕೆದರಿ ತಮತಮಗೆದ್ದು ನುಡಿದರು ಕಂಡೆಯುವ ಜಡಿದು
ಉದಿರ ಹೊಯ್ವೆವು ಹಲುಗಳನು ಕಿ
ಬ್ಬದಿಯಲುಗಿವೆವು ಕರುಳನಹಿತರ
ತಿದಿಯ ಸುಲಿವೆವು ಬೆಸಸು ನೇಮವನೆಂದರತಿರಥರು ೪೩

ಆತನಿಂದೇನಹುದು ಹೊಲ್ಲೆಹ
ವಾತನಿಂದೇನಹುದು ಲೇಸುಗ
ಳಾತನಿಂದೇ ಬರಲಿ ಹಿಂದಣ ಕಾನನಾಯುಸದ
ಯಾತನೆಯ ಸೈರಿಸಿದ ನಮಗಿ
ನ್ನಾತನುಡಿದೊಡೆ ಹಾನಿಯೇ ನೀವ್
ಕಾತರಿಸದಿರಿಯೆಂದು ಸಂತೈಸಿದನು ಯಮಸೂನು ೪೪

ಕಳುಹಿದನು ಬೀಡಾರಕವನಿಪ
ತಿಲಕನಾ ಸಂಜಯನನಲ್ಲಿಂ
ಬಳಿಕ ಮರುದಿನ ಕೃಷ್ಣ ಪಾರ್ಥರು ಸಂಜಯನ ಕರೆಸಿ
ಬಲುಹು ಮೆಲುಹಿನ ನುಡಿಗಳಿಂದವೆ
ತಿಳುಹಿದರು ಬಳಿಕಿತ್ತಲೋಲಗ
ದೊಳಗೆ ದೂತನ ಕರೆಸಿ ಬೀಳ್ಕೊಟ್ಟನು ಯುಧಿಷ್ಠಿರನು ೪೫

ಜನಕನನು ಗಾಂಧಾರಿ ದುರಿಯೋ
ಧನನನವರೊಡ ಹುಟ್ಟಿದರನಂ
ಗನೆಯರನು ದುಸ್ಸಳೆಯ ಸೈಂಧವ ಕರ್ಣ ಶಕುನಿಗಳ
ವಿನುತ ಬಾಹ್ಲಿಕ ಶಲ್ಯ ಭಗದ
ತ್ತನ ನದೀಸುತ ಗುರು ಕೃಪರ ಗುರು
ತನುಜರನು ವಂದಿಸಿದರುಚಿತದಲೆಂದು ಹೇಳೆಂದ ೪೬

ವರ ಪುರೋಹಿತರನು ಸುಸಾವಂ
ತರನು ವೃದ್ಧರ ವಿದುರನನು ಮ
ತ್ತರಮನೆಯ ವಿಶ್ವಾಸಿಗಳನೋಲಗದ ಗಣಿಕೆಯರ
ಕರಿ ಹಯಾಧ್ಯಕ್ಷರನು ಪಡಿಹಾ
ರರನು ಬಾಹತ್ತರ ನಿಯೋಗದ
ಪರಿಜನದ ಕುಶಲವನು ಕೇಳಿದನೆಂದು ಹೇಳೆಂದ ೪೭

ಹೊನ್ನಿನಲಿ ಮಧುರೋಕ್ತಿಯಲಿ ವಿವಿ
ಧಾನ್ನವುಡುಗೊರೆಗಳಲಿ ದೂತನ
ಮನ್ನಿಸಿದನವನೀಶನುಚಿತದಲವನ ಬೀಳ್ಕೊಟ್ಟು
ಪನ್ನಗನ ಸಿರಿಮುಂಚದಾತನು
ಬೆನ್ನಲಿರಲೀ ಪಾಂಡುತನಯರಿ
ಗಿನ್ನು ಮಂಗಳವೆನುತ ಸಂಜಯ ಬಂದನಿಭಪುರಿಗೆ ೪೮

ಮೂರನೆಯ ಸಂಧಿ

ಸೂ. ತಿಳುಹಿದನು ವಿದುರನು ಮಹೀಪತಿ
ತಿಲಕನನು ನಯನೀತಿ ಧರ್ಮಂ
ಗಳ ಸುಸಂಗತಿಯಿಂದ ನೂಕಿದರಿವರು ಯಾಮಿನಿಯ

ಬಂದನಾ ಧೃತರಾಷ್ಟ್ರ ರಾಯನ
ಮಂದಿರಕೆ ಕಂಡನು ಮಹೀಶನ
ನೊಂದೆರಡು ಮಾತಿನಲಿ ಸೂಚಿಸಿ ಮರಳಿದನು ಮನೆಗೆ
ಅಂದಿನಿರುಳೊಳು ನಿದ್ರೆ ಬಾರದೆ
ನೊಂದು ವಿದುರನ ಕರೆದು ರಾಯನ
ತಂದೆ ಬಿಸುಸುಯ್ಯುತ್ತ ನುಡಿದನು ವಿದುರದೇವಂಗೆ ೧

ನಾಳೆ ಸಭೆಯಲಿ ಬಂದ ಹದನನು
ಹೇಳುವನು ಸಂಜಯನು ಸಂಧಿಯೊ
ಕಾಳಗವೊ ಮುಂದರಿಯಬಾರದು ದುಗುಡವಾಯ್ತೆನಗೆ
ಹೇಳು ನಿರುತವನಿಂದಿರುಳನು
ಬೀಳುಕೊಟ್ಟುದು ನಿದ್ರೆಯೆನೆ ಭೂ
ಪಾಲಕನ ಸಂತೈಸಿ ಮಂತ್ರಿಂತೆಂದನಾ ವಿದುರ ೨

ಬಲವಿಹೀನನು ಬಲ್ಲಿದನ ಕೂ
ಡೊಲಿದು ತೊಡಕಿದವಂಗೆ ಕಾಮದ
ಕಳವಳದಲಿರ್ದಂಗೆ ಧನದಳಲಿಂದ ಮರುಗುವಗೆ
ಕಳವಿನಲಿ ಕುದಿವಂಗೆ ದೈವದ
ನೆಲೆಯನರಿಯದವಂಗೆ ದಿಟವಿದು
ತಿಳಿಯೆ ಬಾರದು ನಿದ್ರೆಯೆಂದನು ಭೂಪತಿಗೆ ವಿದುರ ೩

ಒಂದರಿಂದೆರಡಹುದನರಿ ಮೂ
ರಂದವನು ತಿಳಿ ನಾಲ್ಕರಲಿ ಮನ
ಗುಂದದಿರದೈದರಲಿ ವರ್ಜಿಪುದಾರನೇಳರಲಿ
ಒಂದಿಸದಿರೆಂಟನು ವಿಚಾರಿಸಿ
ಮುಂದುವರಿವೊಂಬತ್ತರಲಿ ಮನ
ಗುಂದಿಸದಿರೀರೈದರಲಿ ಭೂಪಾಲ ಕೇಳೆಂದ ೪

ತನ್ನ ಚಿಂತೆಯದೊಂದು ದೈವದ
ಗನ್ನಗತಕವದೆರಡು ಭಾವದ
ಬನ್ನಣೆಯ ಬಗೆ ಮೂರು ದೈವದ ಭಿನ್ನಮುಖ ನಾಲ್ಕು
ತನ್ನ ನೆನಹಿನವೋಲು ಕಾರ್ಯವು
ಚೆನ್ನಹಡೆ ಲೋಕಕ್ಕೆ ತಾ ಬೇ
ರಿನ್ನು ದೈವವದೇಕೆ ತಾನೇ ದೈವರೂಪೆಂದ ೫

ಒಂದು ವರ್ಣವನರುಹಿದವ ಗುರು
ವೊಂದಪಾಯದಲುಳಿಹಿದವ ಗುರು
ಬಂದ ವಿಗ್ರಹದೊಳಗೆ ರಕ್ಷಿಸಿದಾತ ಪರಮಗುರು
ಒಂದೆರಡು ಮೂರೈಸಲೇ ತಾ
ನೆಂದು ಗರ್ವೀಕರಿಸಿದವರುಗ
ಳೊಂದುವರು ಚಾಂಡಾಲ ಯೋನಿಯೊಳರಸ ಕೇಳೆಂದ ೬

ತನ್ನ ಕಾರಿಯ ಕಾರಣವನುಳಿ
ದನ್ಯಥಾ ಚಿಂತೆಯನು ಮಾಡುವು
ದುನ್ನತಿಕೆ ತಾನಲ್ಲ ನೀತಿಜ್ಞರಿಗೆ ಭಾವಿಸಲು
ಮನ್ನಿಸುವುದಾತ್ಮನನು ಮಿಕ್ಕದ
ನನ್ಯರಿಗೆ ಮಾಡುವುದದಲ್ಲದೆ
ತನ್ನ ತಾ ಮರೆದಿಹುದು ಮತವಲ್ಲೆಂದನಾ ವಿದುರ ೭

ಹಾವು ಹಲವನು ಹಡೆದು ಲೋಕಕೆ
ಸಾವ ತಹವೊಲು ನೂರು ಮಕ್ಕಳ
ನಾವ ಪರಿಯಲಿ ಹಡೆದು ಕೆಡಿಸಿದೆ ಭೂಮಿ ಭಾರಕರ
ಭಾವಿಸಲು ಸರ್ವಜ್ಞ ಸರ್ವಗು
ಣಾವಲಂಬನನೊಬ್ಬನರ್ಜುನ
ದೇವ ಸಾಲದೆ ನಾಡ ನಾಯಿಗಳೇನು ಫಲವೆಂದ ೮

ದೀಪ ದೀಪವ ತೊಳಲಿ ಕರ್ಮ ಕ
ಳಾಪದಲಿ ಕುದಿಕುದಿದು ನಾನಾ
ರೂಪಿನಿಂದಾರ್ಜಿಸುವ ಧರ್ಮದ ಗೊಡವೆ ತಾನೇಕೆ
ಭೂಪ ಕೇಳೈ ಸತ್ಯವೊಂದೇ
ಸೋಪನವು ಸಗ್ಗಕ್ಕೆ ಜನ್ಮದ
ಕೂಪರಕ್ಕಿದು ನಾವೆಯಾಗಿಹುದೆಂದನಾ ವಿದುರ ೯

ಪಾಪದಿಂದಾರ್ಜಿಸಿದೊಡರ್ಥವ
ನಾ ಫಲವನುಂಬವರಿಗಿಲ್ಲಾ
ಪಾಪವೊಬ್ಬಂಗಪ್ಪುದಾರ್ಜಿಸಿದುರಗನಂದದಲಿ
ಕಾಪಥವನಾಶ್ರಯಿಸಿ ಕೋಪಾ
ಟೋಪದಿಂದುತ್ತಮರ ಸರ್ವ
ಸ್ವಾಪಹಾರವ ಮಾಡಿ ಬದುಕುವುದಾವ ಗುಣವೆಂದ ೧೦

ಬವರ ಮುಖದಲಿ ವೈರಿರಾಯರ
ನವಗಡಿಸಿ ತಂದಾ ಧನವ ಭೂ
ದಿವಿಜ ಸಂತತಿಗಿತ್ತ ಫಲವಿನಿತೆಂದು ಗಣಿಸುವಡೆ
ದಿವಿಜಪತಿಗಾಗದು ಕಣಾ ಮಾ
ನವಪತಿಗೆ ಸದ್ಧರ್ಮವಿದು ನಿ
ನ್ನವನು ನೀತಿಯನರಿಯನೈ ಧೃತರಾಷ್ಟ್ರ ಕೇಳೆಂದ ೧೧

ಧರಣಿಯುಮರರ ಧನದಿ ಸಲಹಿದ
ಕರಿತುರಗ ಮೊದಲಾದ ದಳವು
ಬ್ಬರದಿ ಹೆಚ್ಚಿಹುದರಿನೃಪಾಲರ ಯುದ್ಧ ಪರಿಯಂತ
ಜರಿದು ನಸಿವುದು ವಾಹಿನಿಗೆ ಮಳೆ
ತುರು ಮಳಲ ಕಟ್ಟೆಯವೊಲಿದನರಿ
ದರಸುಗಳು ವರ್ಣೋತ್ತಮರ ದೆಸೆಗಂಜಬೇಕೆಂದ ೧೨

ಉರಗನೌಡಿದೊಡದರ ವಕ್ತ್ರದೊ
ಳಿರದೆ ಮೇಣಾ ದಷ್ಟ ದೇಹದೊ
ಳಿರದೆ ರುಧಿರವು ಪೋಪವೊಲು ದುಷ್ಟಾಧಿಕಾರಿಗಳ
ಒರಸೊರಸಿನಿಂ ಜನಪದದ ಧನ
ಹರಿವುದರಸಂಗಲಸಿದಾ ಪ್ರಜೆ
ಗಿರದುಭಯ ಪಿಂಗುವುದನರಿ ಭೂಪಾಲ ಕೇಳೆಂದ ೧೩

ಉರಗನಗಿದೊಡೆ ಮೇಣು ಶಸ್ತ್ರದ
ಲಿರಿದಡೊಬ್ಬನೆ ಸಾವನದರಿಂ
ದರಸು ನೆಗಳಿದ ಮಂತ್ರ ಭೇದಿಸಲರಿನೃಪಾಲಕರ
ಧರೆ ಸಹಿತ ತತ್ಸಕಲ ಬಲ ಸಂ
ಹರಣವಹುದಿದನರಿದು ಭೂಪೋ
ತ್ತರ ರಹಸ್ಯದ ಮಂತ್ರವುಂಟೇ ರಾಯ ನಿನಗೆಂದ ೧೪

ವಿಸು ಧರ್ಮದಲಾರ್ಜಿಸಿದ ಧನ
ವೈಸು ಸಿರಿ ವರ್ಧಿಸುವುದದರಿಂ
ದೇಶ ಮಂಗಳ ಪುತ್ರ ಮಿತ್ರ ಕಳತ್ರವರಿವಿಜಯ
ಪೈಸರಿಸುವುದು ಬಂದ ಬಳಿವಿಡಿ
ದಾಸುರದ ಪಥವಿದನರಿದು ಭೂ
ಮೀಶ ಧರ್ಮವ ಹಿಡಿಯಧರ್ಮವ ಬಿಟ್ಟು ಕಳೆಯೆಂದ ೧೫

ಹರಿವ ನದಿ ತನ್ನಿಚ್ಛೆಯಲಿ ದಡ
ವೆರಡ ಕೆಡಿಸುವವೊಲು ನಾರಿಯು
ರುರವಣೆಗೆ ಕೈಗೊಟ್ಟು ನಡೆಸಿದಡುಭಯ ವಂಶವನು
ನೆರಹುವಳು ನೀರೊಳಗೆ ಮೇರೆಯು
ಮುರಿಯಲೀಯದೆ ಮಾರ್ಗದಲಿ ಮ
ತ್ಸರಿಸದಾಳುವುದನುನಯವು ಭೂಪಾಲ ಕೇಳೆಂದ ೧೬

ಧರೆಯೊಳಗೆ ಕಡು ಮೂರ್ಖರಿವರಿ
ಬ್ಬರು ಕಣಾ ದುರಿಯೋಧನನು ದಶ
ಶಿರನು ಗೋಗ್ರಹಣದಲಿ ವನ ಭಂಗದಲಿ ಮುಂಕೊಂಡು
ಅರಿನೃಪರ ಸತ್ವಾತಿಶಯದುದು
ಬ್ಬರದ ಬಲುಹನು ಕಂಡು ಕಂಡೆ
ಚ್ಚರದೆ ಮರುಳಹುದುಚಿತವೇ ಭೂಪಾಲ ಕೇಳೆಂದ ೧೭

ಕರಣಿಕನ ಹಗೆಗೊಂಡವಂಗೈ
ಶ್ವರಿಯ ಹಾನಿ ಚಿಕಿತ್ಸಕನನಾ
ದರಿಸದಾತಂಗಾಗದಾಯುಷ್ಯಾಭಿವೃದ್ಧಿಗಳು
ಅರಸ ಕೇಳಾಯುಷ್ಯ ಭಾಗ್ಯಗ
ಳೆರಡು ಕೆಡುವವು ತಪ್ಪದವನೀ
ಸುರರ ಬದ್ಧದ್ವೇಷ ಲೇಸಲ್ಲೆಂದನಾ ವಿದುರ ೧೮

ಧರೆಯೊಳಗೆ ರವಿ ಮಂಡಲವನೊದೆ
ದುರವಣಿಸಿ ಹಾಯ್ವರು ತಾವಿ
ಬ್ಬರು ಕಣಾ ಸನ್ಯಾಸಿಯಾಗಿಯೆ ಯೋಗ ಮಾರ್ಗದಲಿ
ಹರಣವನು ಬಿಟ್ಟವರುಗಳು ಸಂ
ಗರದೊಳಭಿಮುಖರಾಗಿ ಮರಣಾಂ
ತರವನೆಯ್ದುವರವರು ಅವನೀಪಾಲ ಕೇಳೆಂದ ೧೯

ಮಾತೃ ಪಿತೃಗಳು ಶತ್ರು ಭಾವವ
ನಾಂತು ನಿಜ ಸಂತಾನದಲಿ ಸಂ
ಪ್ರೀತಿಯನು ನೆಲೆಗೊಳಿಸಿ ಸರ್ವಜ್ಞಾಧಿಕಾರದಲಿ
ಖ್ಯಾತರನು ಮಾಡದಡೆ ಹಂಸ
ವ್ರಾತ ಮಧ್ಯದ ಬಕನವೊಲು ವಿ
ಖ್ಯಾತ ಸಭೆಯೊಳು ಯೋಗ್ಯರಹರೇ ಭೂಪ ಕೇಳೆಂದ ೨೦

ಸುರರ ಮೇಳದಲಾಡುವವರಿ
ಬ್ಬರು ಕಣಾ ಪ್ರಭುವಾಗಿಯು ಕ್ಷಮೆ
ವೆರಸಿದವನು ದರಿದ್ರನಾಗಿಯು ದಾನಿಯೆನಿಸುವನು
ಅರಿದೆನಿಸದತಿಬಲನ ಧರ್ಮೋ
ತ್ಕರುಷ ದುರ್ಬಲಯುತನ ಸ್ಥೈರಣೆ
ಸರಿಸವೆನಿಸದು ರಾಯ ಚಿತ್ತೈಸೆಂದನಾ ವಿದುರ ೨೧

ಧರಣಿ ನುಂಗುವಳಿಬ್ಬರನು ಸಂ
ಗರವ ಜಯಿಸದ ನೃಪನ ದೇಶಾಂ
ತರವ ಚರಿಸದ ಪಂಡಿತನನಿದು ಶಾಸ್ತ್ರಸಿದ್ಧವಲೆ
ಅರಸು ಕುಲದಲಿ ಹುಟ್ಟಿ ಸಾಪ
ತ್ನರುಗಳಿರೆ ದೇಹಾಭಿಲಾಷೆಯು
ಲುರಗನಂತೊಳಗಿಹುದು ಧರ್ಮವೆಯೆಂದನಾ ವಿದುರ ೨೨

ನರ ಜನುಮವತ್ಯಧಿಕವದರೊಳು
ಗುರು ಹಿರಿಯರಿವರೆಂದು ದಾನ
ಕ್ಕರುಹರಿವರಲ್ಲೆಂದು ನೋಡದೆ ಮೂಢ ಮಾರ್ಗದಲಿ
ಕರೆದಪಾತ್ರಂಗಿತ್ತು ಪಾತ್ರನ
ಪರಿಹರಿಸಲೀ ಎರಡರಿಂ ಸಂ
ಹರಣವೈದುವುದಾರ್ಜಿಸಿದ ಧನವರಸ ಕೇಳೆಂದ ೨೩

ತಂದೆ ತಾಯಿಗಳಿಬ್ಬರಾತ್ಮಜ
ವೃಂದವನು ಮಿಗೆ ಸಲಹಿ ತತ್ಸುತ
ರಿಂದ ಲೇಸನು ಪಡೆವವೊಲು ತಜ್ಜನಪದದ ಧನವ
ಕುಂದಿಸದೆ ನೃಪ ಮಂತ್ರಿಗಳು ಸಾ
ನಂದದಲಿ ರಕ್ಷಿಸಲು ಬಳಿಕವ
ರಿಂದ ಸಕಲೈಶ್ವರ್ಯ ಪದವಹುದರಸ ಕೇಳೆಂದ ೨೪

ಕಾಮಿನಿಯರುಗಳಾರು ಕೆಲಬರು
ಕಾಮಿತವ ಕಾಮಿಸುವರಲ್ಲದೆ
ತಾಮಸದಿನಾ ಮೂರುಕರು ಪೂಜಿಸಿದ ಪೂಜೆಗಳ
ಪ್ರೇಮದಿಂದೊಡಬಡುವರಲ್ಲದೆ
ಸೀಮೆವಿಡಿದಿಹುದಾಗದೆಂಬುದ
ನಾ ಮದಾಂಧರು ಬಲ್ಲರೇ ಧೃತರಾಷ್ಟ್ರ ಕೇಳೆಂದ ೨೫

ತನ್ನ ಸುಖ ದುಃಖಂಗಳಿಗೆ ನಿ
ರ್ಭಿನ್ನರಹ ಬಾಂಧವರ ವರ್ಜಿಸಿ
ಗನ್ನಗತಕದಲುಂಡು ಜಾರುವ ಗಾವಿಲರ ಕೂಡಿ
ಅನ್ನರನು ಪತಿಕರಿಸಿ ಬಹುಮಾ
ನೋನ್ನತಿಕೆಯನು ವಿರಚಿಸುವುದಿದು
ತನ್ನ ತಾನೇ ಕೊಂದುಕೊಂಬುದು ಭೂಪ ಕೇಳೆಂದ ೨೬

ಪಿತನಿರಲು ದಾತಾರನಿರೆ ನಿಜ
ಪತಿಯಿರಲು ಸುತ ದಾಸ ಸತಿಯೀ
ತ್ರಿತಯರುಂ ಸ್ವಾತಂತ್ರ್ಯದಪರಲ್ಲಾವ ಕಾಲದಲಿ
ಕ್ಷಿತಿಯೊಳುತ್ತಮ ಮಧ್ಯಮಾಧಮ
ಗತಿಯ ಪುರುಷ ತ್ರಯವನವರಿಂ
ಗಿತವನವರಾಯತವನರಿವೈ ಭೂಪ ಕೇಳೆಂದ ೨೭

ಬೆಳಸು ಘನ ತೃಣವಧಿಕ ಜಲ ನಿ
ರ್ಮಳವೆನಿಪ ಕಾಲದಲಿ ಪರ ಮಂ
ಡಲಕೆ ನಡೆವುದು ಘೃಷ್ಟಪುಷ್ಟ ವಿಹಾರನೆಂದೆನಿಸಿ
ಬಲುಹಹುದು ನಿಜಬಲಕೆ ಬಲವಾ
ನೆಲನ ಮೆಟ್ಟಲು ವೈರಿ ಸೇನಾ
ವಳಿಗೆ ಹೀನತೆ ದೊರಕುವುದು ಧೃತರಾಷ್ಟ್ರ ಕೇಳೆಂದ ೨೮

ಮಾಲೆಗಾರ ಸಿಳೀಮುಖನ ಪಶು
ಪಾಲಕನವೋಲ್ ಪ್ರಜೆಯ ರಕ್ಷಿಸಿ
ಮೇಲೆ ತೆಗೆವೈ ಧನವನುಳಿದಂಗಾರಕಾರಕನ
ವೋಲು ಕಡುದುರು ವ್ಯಾಘ್ರನಂತೆ ವಿ
ತಾಳಿಸಲು ಪ್ರಜೆ ನಸಿಯಲರಸಿನ
ಬಾಳಿಕೆಗೆ ಸಂದೇಹವರ್ಥಿಯಾ ರಾಯ ಕೇಳೆಂದ ೨೯

ಎಲ್ಲಿಹುದು ಋಣಭಯವು ಮನುಜರೊ
ಳಲ್ಲಿಹುದು ದೇವಾಂಶ ನಿಜವಾ
ಗೆಲ್ಲಿಹುದು ಸನ್ಮಾರ್ಗ ಬಳಿಕಲ್ಲಿಹುದು ಬ್ರಾಹ್ಮಣ್ಯ
ಎಲ್ಲಿಹುದು ಪರಸತಿಯರಂಜಿಕೆ
ಯಲ್ಲಿಹುದು ವಿಜ್ಞಾನವಿದನರಿ
ದಲ್ಲದಿಹಪರವಿಲ್ಲ ಚಿತ್ತೈಸೆಂದನಾ ವಿದುರ ೩೦

ರಕ್ಷಿಸಿದ ಧನದಿಂ ಪುರಂಧ್ರಿಯ
ರಕ್ಷಿಸುವುದು ಪುರಂಧ್ರಿಯಿಂದವೆ
ರಕ್ಷಿಸುವುದಾತ್ಮನನು ಧನವಿಡಿದಾವ ಕಾಲದಲಿ
ಲಕ್ಷ್ಯ ಭೇದವನರಿದು ನಡೆದು ವಿ
ಲಕ್ಷವನು ಮುರಿದಾತ್ಮ ರಕ್ಷೆಯ
ನೀಕ್ಷಿಸುವುದನುನಯುವಲ್ಲೈ ಭೂಪಾಲ ಕೇಳೆಂದ ೩೧

ತಿಳಿದು ನಾಲ್ವರೊಳೊರೆದ ಕಾರ್ಯವ
ನುಳಿವುದಿಬ್ಬರನಿಬ್ಬರೊಳು ಮ
ತ್ತುಳಿವುದೊಬ್ಬನನೊಬ್ಬನಿಂ ನಿಶ್ಚಯಿಸಿ ಬಳಿಕವನ
ಕಳೆದು ತಾನೇ ತನ್ನೊಳಗೆ ಬಗೆ
ಗೊಳೆ ವಿಚಾರಿಸಿ ಮಾಳ್ಪ ಕಾರ್ಯಕೆ
ಹಳಿವು ಹೊರುವುದೆ ರಾಯ ಚಿತ್ತೈಸೆಂದನಾ ವಿದುರ ೩೨

ನಿವಡಿಸಿದ ವಿದ್ಯಕ್ಕೆ ಸಮ ಬಂ
ಧುವನು ರೋಗಾವಳಿಗೆ ಸಮ ಶ
ತ್ರುವನು ಸಂತಾನಕ್ಕೆ ಸಮ ಸಂತೋಷದುದಯವನು
ರವಿಗೆ ಸಮವಹ ತೇಜವನು ವಾ
ಸವನ ಸಮ ಭೋಗವನು ಬಲದಲಿ
ಶಿವನ ಬಲದಿಂದಧಿಕ ಬಲವನು ಕಾಣೆ ನಾನೆಂದ ೩೩

ಹಿರಿದು ಮಾನೋನ್ನತಿಕೆಯನು ಬಂ
ಧುರದ ಧನವನು ಗಾರುಹಸ್ಥ್ಯದ
ಪರಮಧರ್ಮವನಾವ ಬಯಸುವನವನ ಭವನದಲಿ
ನಿರುತ ವೃದ್ಧ ಜ್ಞಾನಿ ವಂಶೋ
ತ್ತರ ದರಿದ್ರ ಪ್ರಿಯನಪತ್ಯಾಂ
ತರ ಭಗಿನಿಯಿ ನಾಲ್ವರಿರಬೇಕೆಂದನಾ ವಿದುರ ೨೮

ಧರಣಿಪತಿ ಚಿತ್ತವಿಸು ಸ್ವರ್ಗದ
ಲೊರೆದನಿಂದ್ರಂಗಮರ ಗುರು ದೇ
ವರಲಿ ಸಂಕಲ್ಪವನು ಕೃತವಿದ್ಯರಲಿ ವಿನಯವನು
ಹಿರಿಯರಲಿ ಸಂಭಾವನೆಯ ಸಂ
ಹರಣ ಪದವನು ಪಾಪ ಕಾರ್ಯದೊ
ಳಿರದೆ ಮಾಡುವುದೆಂಬ ನಾಲ್ಕನು ರಾಯ ಕೇಳೆಂದ ೩೫

ಆವುದೀ ಲೋಕಕ್ಕೆ ಹಿತವದ
ನೋವಿ ನಡೆವ ಜನಕ್ಕೆ ನಿಂದೆಯ
ದಾವುದದನಾಚರಿಸದಿಹ ನಾಸ್ತಿಕರ ನಂಬುಗೆಯ
ಠಾವುಗಾಣದ ತತ್ವ ವಿಜ್ಞಾ
ನಾವಲಂಬನನೆನಿಪನಾತನು
ಭೂವಲಯದೊಳಗುತ್ತಮನು ಭೂಪಾಲ ಕೇಳೆಂದ ೩೬

ಪಿತನು ಗುರು ಶಿಖಿಯಾತ್ಮ ತಾಯೆಂ
ಬತುಳ ಪಂಚಾಗ್ನಿಯನು ಕ್ರಮದಿಂ
ಪ್ರತಿದಿನಂ ಪರಿಚರಿಯ ಮಾಳ್ಪುದು ಲೇಸ ಬಯಸುವರೆ
ಪಿತೃಗಳನು ದೇವರನು ವೃದ್ಧರ
ನತಿಥಿಗಳ ಪೂಜಿಸಿದವನಾವವ
ಪಿತನ ಕೀರ್ತಿಯ ಧರ್ಮವನು ಪಡೆವವನೆ ಸುತನೆಂದ ೩೭

ಸಿರಿಯನುಳ್ಳವನವನೆ ಕುಲಜನು
ಸಿರಿಯನುಳ್ಳವನೇ ವಿದಗ್ಧನು
ಸಿರಿಯನುಳ್ಳವನೇ ಮಹಾತ್ಮನು ಸಕಲಗುಣಯುತನು
ಸಿರಿಯನುಳ್ಳವನೇ ಸುಶೀಲನು
ಸಿರಿರಹಿತ ಶಿವನಾದೊಡಾಗಲಿ
ಸರಕು ಮಾಡದು ಲೋಕವವನೀಪಾಲ ಕೇಳೆಂದ ೩೮

ಸಿರಿ ನೆಲೆಯೆ ಜವ್ವನ ನೆಲೆಯೆ ಮೈ
ಸಿರಿ ನೆಲೆಯೆ ತನು ನೆಲೆಯೆ ಖಂಡೆಯ
ಸಿರಿ ನೆಲೆಯೆ ನಿನಗರಸುತನವುಳ್ಳನ್ನ ನೀತಿಯಲಿ
ಧರೆಯ ರಕ್ಷಿಸು ಬಂಧುಗಳನು
ದ್ಧರಿಸು ಧರ್ಮವ ಸಾಧಿಸಿಂತಿದು
ನರಪತಿಗಳಿಗೆ ನೀತಿ ಚಿತ್ತೈಸೆಂದನಾ ವಿದುರ ೩೯

ವರುಷವೈದರೊಳರಸೆನಿಸಿ ದಶ
ವರುಷ ದಾಸತ್ವವನು ಭಾವಿಸಿ
ವರುಷ ಹದಿನಾರರಲಿ ಪುತ್ರನ ಮಿತ್ರನೆಂದೆನಿಸಿ
ಪರಿವಿಡಿಗಳಲಿ ನಡೆಸಿ ಮದ ಮ
ತ್ಸರವ ಮಾಣಿಸಿ ನೆರೆದ ಮಕ್ಕಳ
ನರಮೃಗವ ಮಾಡುವರೆ ಭೂಮಿಪಾಲ ಕೇಳೆಂದ ೪೦

ಧನಮದದಿ ಕುಲಮದದಿ ವಿದ್ಯಾ
ಘನದಿ ಯವ್ವನ ಮದದಿ ದ್ವಿಜ ಗುರು
ವನು ವಿಭಾಡಿಸಿ ನೀನು ತಾನೆಂದೆನುತ ಹೂಂಕರಿಸಿ
ಮುನಿಸಿನಲಿ ಸಾತ್ವಿಕರೊಳೊಬ್ಬರ
ನನುಗಡಿಸಿ ಗರ್ಜಿಸಲು ನರಕದಿ
ಮುಣುಗಿದಲ್ಲದೆ ಬೇರೆ ಗತಿಯಿಲ್ಲೆಂದನಾ ವಿದುರ ೪೧

ಸಲಹಿದೊಡೆಯನ ದಿವ್ಯಮಂತ್ರವ
ಕಲಿಸಿದಾಚಾರ್ಯನನು ಅನುವರ
ದೊಳಗೆ ತಲೆಗಾಯಿದನ ದುರ್ಭಿಕ್ಷದಲಿ ಸಲಹಿದನ
ಜಲದೊಳಾಳ್ದನನೆತ್ತಿದನನುರಿ
ಯೊಳಗೆ ಪರಿಹರಿಸಿದನ ಮರೆದವ
ನಿಳಿವನೈ ಕುಲಕೋಟಿ ಸಹಿತ ಮಹಾಂಧ ನರಕದಲಿ ೪೨

ಒಲಿದವಳ ಬಿಸುಟೊಲ್ಲದವಳಿಗೆ
ಹಲುಬುವವನಹಿತರಲಿ ಸಖ್ಯಾ
ವಳಿಯನೆಸಗುವನರಿಯದುದ ತಾ ಬಲ್ಲೆನೆಂಬವನು
ಒಲಿದು ಕೇಳದೆ ಹೇಳುವವ ಕೈ
ನಿಲುಕಲರಿಯದ ಕಾರ್ಯದಲಿ ಹಂ
ಬಲಿಸಿ ಮರುಗುವನವನೆ ಮೂಢನು ರಾಯ ಕೇಳೆಂದ ೪೩

ಹರುಷ ದರ್ಪ ಕ್ರೋಧ ಲಜ್ಜಾ
ತುರತೆ ಮಾನ ವಿಮಾನವಿವರಲಿ
ನಿರುತ ಸಮನೆಂದೆನಿಸಿ ಕೃತ್ಯಾಕೃತ್ಯ ಕೌಶಲವ
ವಿರಚಿಸುವ ಕಾಲದಲಿ ಶೀತೋ
ತ್ಕರದಿ ಭಯವೊಡ್ಡೈಸಲದರಿಂ
ಪರಿಹರಿಸದಾ ಕಾರ್ಯವೆಸಗುವನವನೆ ಪಂಡಿತನು ೪೪

ಕರೆಕರೆದು ಮೃಷ್ಟಾನ್ನವನು ಭೂ
ಸುರರಿಗೀವ ಸದಾಗ್ನಿ ಹೋತ್ರಾ
ಚರಿತನಹ ವೇದಾಂತ ವೇದಿಯನಾ ಪತಿವ್ರತೆಯು
ಉರುತರದ ಮಾಸೋಪವಾಸಿಯ
ನಿರದೆ ಮಾಸ ಸಹಸ್ರ ಜೀವಿಯ
ನರಸ ಕೇಳಭಿವಂದಿಸುವರೈ ಮೂರು ಮೂರ್ತಿಗಳು ೪೫

ಬಿಸುಟು ಕಳೆವುದು ನೀತಿ ಶಾಸ್ತ್ರವ
ನುಸುರದಾಚಾರಿಯನ ವೇದ
ಪ್ರಸರವಿಲ್ಲದ ಋಷಿಜನವ ರಕ್ಷಿಸದ ಭೂಭುಜನ
ಒಸೆಯದಬಲೆಯನೂರೊಳಾಡುವ
ಪಶುವ ಕಾಯ್ದನನಡವಿಗುರಿಯುಹ
ನುಸಿಯನಾ ಪಿತನಿಂತವರುವರನು ರಾಯ ಕೇಳೆಂದ ೪೬

ವ್ಯಸನವೇಳರ ಕಾಲುಕಣ್ಣಿಯ
ಹಸರದೊಳಗಳವಳಿದು ಹೆಚ್ಚಿದ
ವಿಷಮದಿರುಬಿನೊಳದ್ದು ಮಾಯಾಮಯದ ತೋಹಿನಲಿ
ಬಸವಳಿದು ಷಡುವರ್ಗ ವೇಧೆಯ
ನುಸುಳುಗುಂಡಿಯನೀಕ್ಷಿಸದೆ ತಾ
ಮಸದೊಳಿತಿರುಹುದುಚಿತವೇ ಹೇಳೆಂದನಾ ವಿದುರ ೪೭

ಅತಿಬಲನ ಹಗೆಗೊಳುವನಿಹಪರ
ಗತಿ ವಿಚಾರವ ಮರೆವ ಲೋಕ
ಸ್ಥಿತಿಯನುಲ್ಲಂಘಿಸುವ ಮರ್ಮಜ್ಞರ ವಿರೋಧಿಸುವ
ವಿತತ ಭಾಷಿತನಪ್ಪ ತನ್ನಿಂ
ಗಿತವನವರಾಯತವನರಿಯದ
ಕ್ಷಿತಿಪನವ ಮೂಢಾತ್ಮನೈ ಭೂಪಾಲ ಕೇಳೆಂದ ೪೮

ಬಲುಹರಿದು ಕೋಪಿಸುವ ಬದುಕಿನ
ಬಳಿಯರಿದು ಕೊಡುವಾತ್ಮ ಹಿತವನು
ತಿಳಿದು ನಿರ್ಮಲವೆನಿಪ ಮೇಲಣ ತಾಗು ಬಾಗುಗಳ
ಹೊಲಬರಿದು ಸುಖ ದುಃಖದಲಿ ಸಂ
ಚಲಿಸದಿಹ ಗಂಗಾ ಮಡುವಿನಂ
ತೊಳಗುದೋರದೆ ನಡೆವವನು ಪಂಡಿತನು ಕೇಳೆಂದ ೪೯

ದಾನವಿಲ್ಲದ ವಿತ್ತ ಬುಧ ಸ
ನ್ಮಾನವಿಲ್ಲದ ರಾಜ್ಯ ಬಲು ಸುಯಿ
ಧಾನವಿಲ್ಲದ ಸುದತಿ ಧೀಮಾನಿಲ್ಲದಾಸ್ಥಾನ
ಜ್ಞಾನವಿಲ್ಲದ ತಪವು ವೇದ ವಿ
ಧಾನವಿಲ್ಲದ ವಿಪ್ರ ಶರಸಂ
ಧಾನವಿಲ್ಲದ ಸಮರ ಮೆರೆಯದು ರಾಯ ಕೇಳೆಂದ ೫೦

ದಿನವ ಬಂಜೆಯ ಮಾಡದಿಹಪರ
ವಿನಯನಹ ವರ ದೈವ ಗುರು ಪೂ
ಜನೆಯ ಬುಧ ಸೇವನೆಯ ಕಾಲೋಚಿತದ ವಿವರಣವ
ಮನನದಿಂದಾ ಶ್ರವಣ ವಿದ್ಯಾ
ಸನದಿನಿವನನುಗೊಳಿಪನಾವನು
ಮನುಜರೊಳಗುತ್ತಮನೆಲೆ ಭೂಪಾಲ ಕೇಳೆಂದ ೫೧

ಸಲುವೆನೆಂದಂತಃಪುರಕೆ ಸಂ
ಚಲಿಸುವವನಾಪ್ತರನು ಬಿಸುಟ
ಗ್ಗಳಿಸುವವನಹಿತರಲಿ ಧರ್ಮವನುಳಿದಧರ್ಮವನು
ಬಳಸುವವನೇಕಾಂತದಲ್ಲಿಗೆ
ಸುಳಿವವನು ಹಸಿವಿಲ್ಲದುಂಬುವ
ನಿಳೆಯೊಳಗೆ ಮೂಢಾತ್ಮನೈ ಧೃತರಾಷ್ಟ್ರ ಕೇಳೆಂದ ೫೨

ಬುಧರೊಳಗೆ ಹಗೆಗೊಳುವ ಬುಧರಂ
ನಿಧನಗೆಯ್ದಿಪ ಬುಧರನೇಳಿಪ
ಬುಧರ ಜರೆದೊಡೆ ನಲಿವ ಬುಧರಂ ಪೊಗಳ್ವರಂ ಪಳಿವ
ಬುಧರನಧಮರ ಮಾಳ್ಪ ಬುಧರಂ
ವಿಧಿಗೊಳಿಪ ಬುಧರ್ಗೀವರಂ ಕವ
ರ್ಧಮ ಭೂಪರಿಗಂಟದಿಹುದೆ ವಿನಾಶಕರವೆಂದ ೫೩

ಕುಸುಮ ಫಲ ತಾಂಬೂಲ ಗಂಧ
ಪ್ರಸರ ಭೋಜನ ಗಮನ ನೆನಹಿಂ
ದೆಸೆವ ಕಾರ್ಯದೊಳಿನಿಬರೊರಗಿದಡೊಬ್ಬನೆಚ್ಚರಿಕೆ
ಎಸೆಯಲನಿತುವನೊಬ್ಬನೇ ಭೋ
ಗಿಸುವಡವನೀಪಾಲರಿಗೆ ತಾ
ಸಸಿನವೆನಿಸದು ರಾಯ ಚಿತ್ತೈಸೆಂದನಾ ವಿದುರ ೫೪

ಕಳಿದ ತರಣಿಯ ಕಿರಣದಲಿ ನಿ
ರ್ಮಲಿನ ಜಲದಲಿ ದುಗ್ಧ ಪಾನಂ
ಗಳಲಿ ವರ ಯುವತಿಯರ ಸಂಭೋಗಾಂತರಂಗದಲಿ
ತಳಿತ ಹೋಮದ ಹೊಗೆಗಳಲಿ ದಿನ
ಬಲದೊಳಾಯುಷ್ಯಾಭಿವೃದ್ಧಿಯು
ಬೆಳವಿಗೆಗಳಹವರಸ ಚಿತ್ತೈಸೆಂದನಾ ವಿದುರ ೫೫

ಎಳೆಯ ರವಿ ರಶ್ಮಿಯಲಿ ಪ್ರೇತಾಂ
ಗಳದ ಧೂಮ ಜ್ವಾಲೆಯಲಿ ಗಾ
ವಿಲ ವಯೋವೃದ್ಧೆಯರ ಸಂಭೋಗಾಂತರಂಗಳಲಿ
ಕೊಳಚೆ ನೀರಿನ ಬಳಕೆಯಲಿ ಕ
ತ್ತಲೆಯ ದಧ್ಯೋದನದಲಾಯುಷ
ವಿಳಿದು ಹೋಗದೆ ದಿನ ದಿನದೊಳವನೀಶ ಕೇಳೆಂದ ೫೬

ಮಸುಳಿಸಿದ್ದ ದುಕೂಲ ರದನದೊ
ಳೆಸೆವ ಹಾವಸೆ ಭಕ್ಷ್ಯದುನ್ನತ
ದೆಸಕ ನಿಷ್ಠುರ ವಾಕ್ಯವುದಯಾಸ್ತಮಯ ಕಾಲದಲಿ
ಎಸೆವ ನಿದ್ರಾಂಗನೆಯೊಳೊಂದಿರೆ
ಬಿಸಜಲೋಚನನಾದೊಡೆಯು ವ
ರ್ಜಿಸುವಳವರನು ಭಾಗ್ಯಸಿರಿ ಭೂಪಾಲ ಕೇಳೆಂದ ೫೭

ಒಂದು ಮೊದಲಾರಂತ್ಯವಾದಾ
ಸಂದ ಪೂಗ ಫಲ ಕ್ರಮಂಗಳ
ಚಂದವನು ಚಿತ್ತೈಸು ಲಾಭಾಲಾಭ ಸುಖದುಃಖ
ಕುಂದದಿಹುದಾಯುಷ್ಯ ಮರಣವಿ
ದೆಂದು ತತ್ಕಾಲದಲಿ ಭೋಗಿಸು
ವಂದವನು ಚಿತ್ತೈಸುವುದು ತಾಂಬೂಲಧಾರಕರು ೫೮

ನಾಗವಲ್ಲಿಯ ಹಿಂದು ಮುಂದನು
ನೀಗಿ ಕಳೆಯದೆ ಚೂರ್ಣಪರ್ಣ
ತ್ಯಾಗವಿಲ್ಲದೆ ದಂತ ಧಾವನ ಪರ್ಣವನು ಸವಿದು
ಭೋಗಿಸುವೊಡಮರೇಂದ್ರನಾಗಲಿ
ನಾಗಭೂಷಣನಾದೊಡವನನು
ನೀಗಿ ಕಳೆವಳು ಭಾಗ್ಯವಧು ಭೂಪಾಲ ಕೇಳೆಂದ ೫೯

ಸ್ಥಾನ ಪಂಚಕದಿಂದ್ರಿಯದ ಸಂ
ಸ್ಥಾನದಲಿ ನಿದ್ರಾಂಗನೆಯು ಸ
ನ್ಮಾನಿಸುವೊಡಾ ಸಾಧನದ ಪಂಚಕದ ಪರಿವಿಡಿಯ
ಸ್ಥಾನವರಿದಾರೋಗಣೆಯು ಸಂ
ಧಾನದಲಿ ಚಿತ್ತೈಸುವುದು ರಾ
ಜಾನುಮತವಿದು ಸಕಲ ಸುಖಕರವೆಂದನಾ ವಿದುರ ೬೦

ಜನಜನಿತ ಮಲ ಮೂತ್ರ ಮೂರಾ
ರೆನಿಸುವುದು ರತಿಯೊಂದು ನಿಜ ಭೋ
ಜನವೆರಡು ಸುಯಿಲೊಂದು ವರ ತಾಂಬೂಲ ಹದಿನೈದು
ಇನಿತುವನು ತಪ್ಪದೆ ನಡೆಸಲಾ
ಜನಪನಾರೋಗಣೆಗೆ ಸುಖ ಸಂ
ಜನಿಸುವುದು ದಿನಚರಿಯದಿಂದವನೀಶ ಕೇಳೆಂದ ೬೧

ನೆರೆದ ಸಚರಾಚರವಿದೆಲ್ಲವು
ನರರ ನಿಜಭೋಜನಕೆ ಜನಿಸಿದ
ವರಸ ಕೇಳಿದರೊಳಗೆ ಭೋಜ್ಯಾಭೋಜ್ಯವನು ತಿಳಿದು
ಪರಿಹರಿಸಬಲ್ಲವರುಗಳು ಘನ
ತರದ ಸುಕೃತವನೈದುವರು ಭೂ
ವರರೊಳಗೆ ಸಂದೇಹವೇ ಭೂಪಾಲ ಕೇಳೆಂದ ೬೨

ತುರಗ ಹೃದಯ ಧ್ವನಿಯ ಸಿಡಿಲಿನ
ಧರಧುರದ ಗರ್ಜನೆಯ ನಾರಿಯ
ರಿರವ ಪುರುಷನ ಭಾಗ್ಯದೇವತೆಯೊಲಿವ ಕಾಲವನು
ವರುಷದುದಯವ ಬರನ ಬರವನು
ವಿರಚಿಸುವೊಡೆ ವಿಧಾತೃಗಳವ
ಲ್ಲರಸ ಕೇಳ್ ಮಾನವರಿಗಿದು ಗೋಚರಿಸಲರಿದೆಂದ ೬೩

ಬಡತನಗಳಡಸಿದೊಡೆ ಬಂಧುಗ
ಳೆಡಹಿ ಕಾಣರು ಭಂಟ ತಾನಾ
ದೊಡೆಯು ಬಂದಾಪತ್ತಿನೊಳಗೆ ಪರಾಙ್ಮುಖನೆಯಾಗಿ
ನುಡಿಸದವನೇ ಹಗೆ ಶರೀರದೊ
ಳಡಸಿದಾ ರುಜೆ ಬಾಧೆಗಡವಿಯ
ಗಿಡ ಮರಂಗಳು ರಕ್ಷಿಸವೆ ಹೇಳೆಂದನಾ ವಿದುರ ೬೪

ಕಾಲದೊಳಗೆ ವಸಂತ ವಿದ್ಯಾ
ಜಾಲದೊಳಗೆ ಕವಿತ್ವ ಗಜ ವೈ
ಹಾಳಿಯಲಿ ದೇವೇಂದ್ರ ಮಿತ್ರಶ್ರೇಣಿಯೊಳು ವಾಣಿ
ಭಾಳನೇತ್ರನು ದೈವದಲಿ ಬಿ
ಲ್ಲಾಳಿನಲಿ ಮನ್ಮಥನು ಧನದಲಿ
ಹೇಳಲೇನಭಿಮಾನವೇ ಧನವೆಂದನಾ ವಿದುರ ೬೫

ಮುಂದೆ ಗುರುವನು ಬಂಧು ಜನವನು
ಹಿಂದೆ ಕರ್ಮಾಂತ್ಯದಲಿ ಸೇವಕ
ವೃಂದವನು ಕೊಂಡಾಡುವುದು ಸಾಹಿತ್ಯ ಭಾವವಿದು
ಹಿಂದು ಮುಂದಾವಾಗ ನಿನ್ನಯ
ನಂದನರ ನಾರಿಯರ ಹೊಗಳುವು
ದಂದವೇ ಭೂಪಾಲ ಚಿತ್ತೈಸೆಂದನಾ ವಿದುರ ೬೬

ತುರಗದೆಡಬಲ ಗಜದ ಸಮ್ಮುಖ
ತರುಣಿಯರುಗಳ ಸರ್ವತೋಮುಖ
ಹಿರಿದು ದುರ್ಜನನಿದ್ದ ದೇಶವದೆಯ್ದೆ ವ್ಯಾಘ್ರಮುಖ
ಭರದಿನಾ ದೇಶವನು ಬಿಟ್ಟರ
ವರಿಸದನ್ಯಗ್ರಾಮಗಳ ವನಾಂ
ತರವನೈದುವುದಲ್ಲದಲ್ಲಿಹುದುಚಿತವಲ್ಲೆಂದ ೬೭

ಎತ್ತಲೆತ್ತಲು ಪೋಪ ಮನುಜಂ
ಗತ್ತಲತ್ತಲೆ ದೈವ ಕೂಡೆ ಬ
ರುತ್ತಿಹುದು ಬೆಂಬಿಡದೆ ನಾನಾ ದೇಶ ದೇಶದಲಿ
ಮಿತ್ರನುರು ಮಧ್ಯಸ್ಥ ಪುರುಷನ
ಮಿತ್ರನೌದಾಸೀನನೊಬ್ಬನು
ಕೃತ್ರಿಮನು ಸಹಜೀವಿಯಿಂತಿವರರಸ ಕೇಳೆಂದ ೬೮

ಗುರು ವಿರೋಧ ಮಹೀಬುಧರ ಮ
ತ್ಸರವು ದೈವದ್ರೋಹ ಗುಣ ಸಾ
ಗರನ ಬಂಧು ದ್ವೇಷವತ್ಯಾಲೀಢ ದೀನತನ
ಶರಣಜನ ಪಾಂಡಿತ್ಯವೆಂಬಿವ
ನರವರಿಸದಂಗೈಸೆ ಭೂಪನ
ಸಿರಿಗೆ ಮೊಳೆಯದೆ ಕೇಡು ಚಿತ್ತೈಸೆಂದನಾ ವಿದುರ ೬೯

ಬಲು ಪ್ರಧಾನನ ವೈರ ಹಿತವಹ
ಲಲನೆಯರ ಮನದಳಲು ಹಗೆಯಲಿ
ಬಳಸುವಂತಸ್ಥತೆಯನಾಮಿಕರೊಡನೆ ಕೆಳೆಗೋಷ್ಠಿ
ಬಲದೊಡನೆ ನಿರ್ಬಂಧ ಧರ್ಮದ
ನೆಲೆಯನರಿಯದ ದಾನಿಗಳ ಸಿರಿ
ಸುಳಿವ ಗಾಳಿಗೆ ಮಲೆವ ದೀಪವು ಕೇಳು ಧೃತರಾಷ್ಟ್ರ ೭೦

ಹುಸಿ ಪರದ್ರೋಹವು ಪರ ಸ್ತ್ರೀ
ವ್ಯಸನಪೇಯವಸೂಯೆ ಮಾನ್ಯ
ದ್ವಿಷತೆ ಪತಿತ ಸಮೇತವಾತ್ಮಸ್ತುತಿಯೆನಿಪ್ಪವನು
ಬಿಸುಟು ತದ್ವಿಪರೀತದಲಿ ವ
ರ್ತಿಸುವನವನೇ ರಾಯನಾತಗೆ
ವಸುಧೆಯೊಳಗೆಣೆಯಾವನೈ ಭೂಪಾಲ ಕೇಳೆಂದ ೭೧

ಇದು ಸಮಾಹಿತವಿದು ಶುಭೋದಯ
ವಿದು ಸಕಲ ಪುರುಷಾರ್ಥ ಸಾಧನ
ವಿದು ಸುಜನ ಸನ್ಮಾನವಿದು ಸಂಸಾರ ಸೌಖ್ಯಫಲ
ಇದು ಸುಬಲವಿದಬಲವಿದಾಮ್ನಾ
ಯದ ಸುನಿಶ್ಚಯ ನೀತಿ ಕಾರ್ಯದ
ಹದನನರಿದಾಚರಿಸಬಲ್ಲವನವನೆ ಪಂಡಿತನು ೭೨

ಶತ್ರುಕಾಲ ಸುದೇಶ ವರ್ಗ ಸು
ಮಿತ್ರರುದಯೋಪಾಯಕರಣ ಸು
ಪಾತ್ರವೆಂಬಿವು ಮೂರು ತೆರನಾಗಿಪ್ಪವಿದರೊಳಗೆ
ಕ್ಷತ್ರಧರ್ಮ ವಿವೇಕವೆಂಬಿವ
ನೊತ್ತುಗೊಳಿಪನೆ ರಾಯನವಗೆ ಧ
ರಿತ್ರಿಯೊಳಗೆಣೆಯಾವನೈ ಭೂಪಾಲ ಕೇಳೆಂದ ೭೩

ಎಲ್ಲಿ ಸುಲಲಿತ ವಿದ್ಯೆ ಬಹು ಗುಣ
ವೆಲ್ಲಿ ಗಣಿಕಾ ನಿಕರ ಮಣಿ ಗಣ
ವೆಲ್ಲಿ ಗಜ ಜಾತ್ಯಶ್ವವೆಲ್ಲಿ ವರೂಥ ಸಂದೋಹ
ಎಲ್ಲಿ ಸುಭಟ ನಿಕಾಯ ನೆರೆದಿಹು
ದಲ್ಲಿ ತನ್ನಾಧೀನ ಮಾಡಲು
ಬಲ್ಲವನೆ ನೃಪನಾತಗಿದಿರಾರೈ ಧರಿತ್ರಿಯಲಿ ೭೪

ದ್ವಾರವೊಂಬತ್ತಿಂದ್ರಿಯಂದಹಂ
ಕಾರಕರಣ ಚತುಷ್ಟಯಂಗಳ
ಸಾರ ಭೂತಾಧಿಕದ ಸುಳಿವಿನ ಪಂಚ ವಾಯುಗಳ
ಹೋರಟೆಗಳಲಿ ಬಳಲಿ ಜೀವನ
ಧೀರನಹವೊಲು ಪಾಂಡುಪುತ್ರರ
ಕೌರವರ ಬೇಳಂಬದಲಿ ಬೆಂಡಾದೆ ನೀನೆಂದ ೭೫

ಮತ್ತನತಿಶ್ರಾಂತನು ಪ್ರಮದೋ
ನ್ಮತ್ತನತಿ ಕುಪಿತಾನನನು ಚಲ
ಚಿತ್ತನತಿ ಕಾಮುಕನು ಲುಬ್ಧನು ಶೂರನೆಂಬವನು
ಕ್ಷುತ್ತೃ ಘನವಾಗುಳ್ಳನಿಂತೀ
ಹತ್ತು ಜನವಾವಾಗ ಧರ್ಮದ
ತತ್ತ್ವವಣೆಗಳನರಿಯರೈ ಭೂಪಾಲ ಕೇಳೆಂದ ೭೬

ದಾನವಿಷ್ಟಾಪೂರ್ತ ವಿನಯ ಸ
ಮಾನ ದೇವಾರ್ಚನೆ ಮಹೀಸುರ
ಧೇನು ಸಂತರ್ಪಣ ಮಹಾತಿಥಿ ಪೂಜೆ ಗುರುಭಕ್ತಿ
ಧ್ಯಾನ ದೀನಾನಾಥಬಂಧು ವಿ
ತಾನ ಶರಣಾಗತ ಸುರಕ್ಷಾ
ಸ್ನಾನತೀರ್ಥಂಗಳನು ಮಾಡಲು ಬೇಹುದವನಿಪರು ೭೭

ಧರೆಯೊಳೀ ಹೊತ್ತಿನಲಿ ನಿನಗೈ
ಶ್ವರಿಯದಲಿ ಮಕ್ಕಳಲಿ ಖಂಡೆಯ
ಸಿರಿಯಲೊಡಹುಟ್ಟಿದರು ಸಪ್ತಾಂಗದಲಿ ಸತಿಯರಲಿ
ಗುರು ಪಿತಾಮಹ ಬಂಧುಜನ ಮಿ
ತ್ರರಲದಾವುದು ಕೊರತೆ ಕೌಂತೇ
ಯರ ನೆರವಿಗರ ಮಾಡುವರೆ ಧೃತರಾಷ್ಟ್ರ ಕೇಳೆಂದ ೭೮

ಉಭಯಕುಲಶುದ್ಧಿಯಲಿ ಹೆಚ್ಚಿದ
ವಿಭವದಲಿ ವಿಗ್ರಹದಲಧಿಕ
ಪ್ರಭೆಗಳಲಿ ಸತ್ಯದಲಿ ಸಾಹಿತ್ಯದಲಿ ವಿನಯದಲಿ
ಅಭವನಂಘ್ರಿಯ ಸೇವೆಯಲಿ ಹರಿ
ನಿಭನೆನಿಸಿ ಬದುಕುವನು ರಾಜ್ಯಕೆ
ವಿಭುವೆನಿಸುವನು ರಾಯ ಚಿತ್ತೈಸೆಂದನಾ ವಿದುರ ೭೯

ವೇಸಿಯಹ ಪರಿಯಂಕದಲಿ ನಿಜ
ದಾಸಿಯಹ ಶಿಶ್ರೂಷೆಯಲಿ ನಿ
ರ್ದೋಷಿಯಹ ಪತಿಭಕ್ತಿಯಲಿ ಮೋಹದಲಿ ತಾಯೆನಿಸಿ
ವಿಸು ಕಾರ್ಯಕೆ ಮಂತ್ರಿಯೆನಿಸುವ
ವೈಸಿರಿಯನುಳ್ಳವಳು ರಾಣೀ
ವಾಸವೆಂದೆನಿಸುವಳೆಲೈ ಭೂಪಾಲ ಕೇಳೆಂದ ೮೦

ತಂದೆ ತಾಯಿಗಳಾಜ್ಞೆಯನು ಸಾ
ನಂದದಲಿ ಪಾಲಿಸುತ ಮದವನು
ಮುಂದುಗೆಡಿಸಿ ಸುಧರ್ಮದಲಿ ರಾಜ್ಯವನು ಪಾಲಿಸುತ
ಬಂಧು ಬಳಗವ ಸಲಹಿ ಭೂಸುರ
ವೃಂದವನು ನೆರೆ ಹೊರೆವಡೆವ ಸುತ
ವಂದ್ಯನೈ ಲೋಕಕ್ಕೆ ಚಿತ್ತೈಸೆಂದನಾ ವಿದುರ ೮೧

ಇಹಪರದ ಸುಖ ಸಂಗತಿಯು ಸಂ
ಗ್ರಹಿಸಿ ವೇದಾಚಾರದಲಿ ಸ
ನ್ನಿಹಿತನಾಗಿ ಸಮಸ್ತ ಕಳೆಯಲಭಿಜ್ಞನೆಂದೆನಿಸಿ
ಅಹಿತ ಕುಲವನು ಸಮರದಲಿ ನಿ
ರ್ವಹಿಸಿ ಶರಣಾಗತರ ಪಾಲಿಸು
ತಿಹಡವನು ಮಂಗನೆನಿಸುವನು ಭೂಪಾಲ ಕೇಳೆಂದ ೮೨

ಇಂದ್ರಿಯವನೊಡೆತುಳಿದು ಕರ್ಮದ
ಬಂದಿಯನು ತಲೆಬಳಚಿ ವಿಷಯದ
ದಂದುಗವನೀಡಾಡಿ ಮಾಯಾ ಪಾಶವನು ಹರಿದು
ದ್ವಂದ್ವವಿರಹಿತನಾಗಿ ವಿಶ್ವದ
ಲೊಂದಿ ಮೆರೆಯಲು ಬಲ್ಲವನು ಗುರು
ವೆಂದೆನಿಸುವನು ರಾಯ ಚಿತ್ತೈಸೆಂದನಾ ವಿದುರ ೮೩

ಒಡಲೊಡವೆ ಮೊದಲಾದುವೆಲ್ಲವ
ತಡೆಯದೊಪ್ಪಿಸಿ ಗುರುವಿನಂಘ್ರಿಯ
ಹಿಡಿದು ಭಜಿಸುತ ಕೊಟ್ಟ ಕೆಲಸಂಗಳೊಳಗನಿತುವನು
ಬಿಡದೆ ಮಾರುತ್ತರವನವರಿಗೆ
ಕೊಡದೆ ಭಯ ಭಕ್ತಿಯಲಿ ತಪ್ಪದೆ
ನಡೆಯ ಬಲ್ಲವನವನೆ ಶಿಷ್ಯನು ರಾಯ ಕೇಳೆಂದ ೮೪

ಯುಕುತಿವಿದರುಗಳಾಗಿ ವಿದ್ಯಾ
ಧಿಕರೆನಿಸಿ ಸಮಬುದ್ಧಿಗಳ ನಾ
ಟಕವ ನಟಿಸುತ ಪರಮ ತತ್ವಜ್ಞಾನಪರರಾಗಿ
ಸಕಲ ಕಳೆಯಲಭಿಜ್ಞರಹ ಧಾ
ರ್ಮಿಕರು ಪರಪುರುಷಾರ್ಥಿಗಳು ವೈ
ದಿಕರಲೇ ವಿದ್ವಾಂಸರೆನಿಸುವರರಸ ಕೇಳೆಂದ ೮೫

ದಂಡ ನೀತಿ ಸ್ಮಾರ್ತ ಶೌಚೋ
ದ್ದಂಡ ವೇದಾಧ್ಯಯನ ನಿಪುಣನ
ಪಂಡಿತಪ್ರಿಯ ಶಾಂತಿ ಪೌಷ್ಟಿಕ ಕರ್ಮ ದೀಕ್ಷಿತನ
ಚಂಡ ದೈವಜ್ಞನನಧಿಕ ಗುಣ
ಮಂಡನನ ಬಹು ಶಾಸ್ತ್ರ ಪಠಣನ
ಪಂಡಿತನ ಪೌರೋಹಿತನ ಮಾಡುವುದರಸ ಕೇಳೆಂದ ೮೬

ಸ್ಥೂಲ ಸೂಕ್ಷ್ಮ ಕೃತಜ್ಞನುತ್ಸವ
ಶೀಲನಕ್ರೋಧಿಯನ ದೀರ್ಘ ವಿ
ಶಾಲ ಸೂತ್ರಿಯ ವೃದ್ಧಸೇವಕ ಸತ್ಯ ವಾಕ್ಶುಚಿಯ
ಕಾಲವೇದಿ ವಿನೀತನವ್ಯಸ
ನಾಳಿ ಸೂರಿ ರಹಸ್ಯ ಸತ್ಕೃತಿ
ಪಾಲನಾನ್ವಿತ ಮಂತ್ರಿಯುಂಟೇ ರಾಯ ನಿನಗೆಂದ ೮೭

ತುರಗ ಗಜ ಭಟರಳವರಿವ ಸಂ
ಗರ ಮಹೋತ್ಸಾಹನ ಜಿತ ಶ್ರಮ
ನರಿಕಟಕ ಭೇದಕನ ನಾನಾಯುಧ ವಿಶಾರದನ
ಭರಿತ ಧೈರ್ಯನ ಪತಿಹಿತನ ಸಂ
ಗರಸದಾರನನೂರ್ಧ್ವರೋಮನ
ಸಿರದೆ ಸೇನಾಪತಿಯ ಮಾಡುವುದರಸ ಕೇಳೆಂದ ೮೮

ತಿಳಿದವನ ಮತಿವಿದನ ಭಾಷಾ
ವಳಿ ಲಿಪಿಜ್ಞನ ಸಾಕ್ಷರನ ಮಂ
ಡಳಿಕ ಸಾಮಂತರ ವಿಶೇಷದಲವಸರವನರಿದು
ಸಲೆ ಕರೆವ ಕಳುಹಿಸುವ ನಿಲಿಸುವ
ಬಲುಹನುಳ್ಳನ ಸುಕರ ದುಷ್ಕರ
ತಿಳಿವ ಹೃದಯನ ಸಂಧಿವಿಗ್ರಹರೆನಿಸಬೇಕೆಂದ ೮೯

ಮಿಸುಪ ಮಣಿಗಣ ಲೋಹ ಕಾಂಚನ
ವಿಸರ ಭೇದವನರಿವ ಕೊಟ್ಟುದ
ನಸಿಯಲೀಯದೆ ತಾನು ಭಕ್ಷಿಸದಹಿ ನಿಧಾನವನು
ಒಸೆದು ಕಾದಿಪ್ಪಂತೆ ಕಾದಿಹ
ಹುಸಿಯದಾಪ್ತನ ಬಹು ಕುಟುಂಬ
ವ್ಯಸನವುಳ್ಳನ ಮಾಳ್ಪುದೈ ಭಂಡಾರ ರಕ್ಷಕನ ೯೦

ಮನ ವಚನ ಕಾಯದಲಿ ದಾತಾ
ರನ ಹಿತವನುಳ್ಳನ ವಿನೀತನ
ವಿನುತ ವನಿತಾ ನತಮುಖನ ನಿಷ್ಕಳಿತ ರೋಷಕನ
ಮುನಿವವರ ಬುದ್ಧಿಯಲಿ ಸಿಲುಕದ
ವನ ವಿಶೇಷ ಕಳಾ ಪ್ರವೀಣನ
ಜನಪ ಚಿತ್ತೈಸುವುದೆಲೈ ತಾಂಬೂಲಧಾರಕನ ೯೧

ಪಿತೃ ಪಿತಾಮಹ ಸೂಪ ಶಾಸ್ತ್ರ
ಯುತನ ಕೈಕರಣೆಗಳಲಧಿಕನ
ನತಿ ಶುಚಿಯ ಸಾಧಕನನಕ್ರೋಧಿಯನನಾಲಸನ
ಪತಿಹಿತನ ಷಡುರಸ ವಿಶೇಷಾ
ನ್ವಿತನನಿತರಾಲಯ ವಿದೂರನ
ಪತಿಕರಿಸುವುದು ಸೂಪಕಾರತೆಗರಸ ಕೇಳೆಂದ ೯೨

ನಿಶಿತ ಪರಿಮಳ ಮೋದದಿಂ ಮೋ
ದಿಸುವ ಗಂಧದ್ರವ್ಯದಲಿ ಪಂ
ಢಿಸಿದ ಜೀವನ ಜೀವ ತನ್ನಯ ಜೀವನವೆಯೆಂದು
ವಸುಮತೀಶರಿಗಿತ್ತು ತಾ ಭೋ
ಗಿಸದೆ ಬಳಸದೆ ರಾಜನನೋಲ
ಗಿಸುವವನೆ ಪಾನೀಯಧಾರಕನರಸ ಕೇಳೆಂದ ೯೩

ಉನ್ನತನ ರೂಪಾಧಿಕನ ಸಂ
ಪೂರ್ಣದಕ್ಷನನನ್ಯರೆನ್ನವ
ರೆನ್ನದನ ಪರರಿಂಗಿತಾಕಾರ ಪ್ರಭೇದಕನ
ಮನ್ನಣೆಗೆ ಬೆರೆಯದನನಾಪ್ತನ
ನನ್ಯ ಕಾರ್ಯೋಚಿತ ಸಮುಪ್ರತಿ
ಪನ್ನ ಪಡಿಹಾರಕನ ಮಾಡುವುದರಸ ಕೇಳೆಂದ ೯೪

ಗ್ರಾಮ ಮೂರರ ಸಂಚರಣೆಗಳ
ಸೀಮೆಯಲಿ ಸರಿಗಮಪದನಿಗಳ
ನೇಮ ತಪ್ಪದೆ ಹರಣಭರಣದ ಹೆಂಪು ತಿರುಪುಗಳ
ಕೋಮಲಿತ ಶಾರೀರ ಹೃದಯದ
ರಾಮಣೀಯಕ ರಚನೆಯಲ್ಲಿ ಸ
ನಾಮನೆನಿಸುವನವನೆ ಗಾಯಕನರಸ ಕೇಳೆಂದ ೯೫

ತಾಳಲಯ ಬೊಂಬಾಳ ಮಿಶ್ರದ
ಹೇಳಿಕೆಯುನಾ ಠಾಯ ಶುದ್ಧದ
ಸಾಳಗದ ಸಂಕೀರ್ಣ ದೇಸಿಯ ವಿವಿಧ ರಚನೆಗಳ
ಮೇಳವರಿವುತ ವಾದ್ಯ ಸಾಧನ
ದೇಳಿಗೆಯು ಸಂಪೂರ್ಣ ಮಾರ್ಗದ
ಸೂಳುಗಳು ಲಯಮಾನವರಿದವನವನೆ ಗಾಯಕನು ೯೬

ಗಾಯದಲಿ ಮೇಣ್ ಚೊಕ್ಕೆಯದಲಡು
ಪಾಯಿಗಳಲುಪಕಾಯದೊಳಗೆ ನ
ವಾಯಿಗಳ ಬಿನ್ನಾಣದಲಿ ಬಳಿಸಂದು ಬೇಸರದೆ
ಸ್ಥಾಯಿಯಲಿ ಸಂಚಾರದಲಿ ಸಮ
ಗೈಯೆನಿಸಿ ನಾನಾ ವಿನೋದದ
ದಾಯವರಿವವನವನೆ ಮಲ್ಲನು ಕೇಳು ಧೃತರಾಷ್ಟ್ರ ೯೭

ಎಡಬಲನನಾರೈವುತೊಬ್ಬನ
ಬಿಡದೆ ನೋಡುತ ಮಕ್ಷಿಕಂಗಳ
ಗಡಣವನು ಕೆದರಿಸುತ ಕಿಗ್ಗಣ್ಣಿಕ್ಕಿ ಕೆಲಬಲನ
ಜಡಿದು ನೂಕುವ ಸ್ವಾಮಿ ಕಾರ್ಯದ
ಕಡೆಯೆನಿಸುತಾವಾಗ ಸೇವೆಗೆ
ಸೆಡೆಯದವನೇ ಚಮರಧಾರಕನರಸ ಕೇಳೆಂದ ೯೮

ಗುಳಿ ತೆವರನೀಕ್ಷಿಸುತ ಬಟ್ಟೆಯ
ಮೆಳೆ ಮರಂಗಳ ಹೊಯ್ಲ ತಪ್ಪಿಸಿ
ನೆಳಲನರಸುತ ವೇಗಗತಿ ಸಾಮಾನ್ಯ ಗತಿಗಳಲಿ
ಬಳಿವಿಡಿದು ಭೂಭುಜರ ಯಾನಂ
ಗಳೊಳಗಳುಕದೆ ಡಗೆಯ ಸೈರಿಸಿ
ಬಳಸುವವನೇ ಛತ್ರಧಾರಕನರಸ ಕೇಳೆಂದ ೯೯

ಹರುಷದಲಿ ನಿಜಜನನಿ ಗರ್ಭವ
ಧರಿಸಿಕೊಂಡಾಡುವವೊಲುತ್ತಮ
ಪುರುಷರಂತರ್ಯಾಮಿಯನು ತಾಳ್ವಂತೆ ಭೂಭುಜರ
ಧರಿಸಿ ಸುಖ ಸಂಗತಿಗಳಲಿ ಸಂ
ಚರಿಸುತಾಳ್ದನ ಹಾನಿ ವೃದ್ಧಿಯ
ಲಿರಲು ಬೆಸದವರೆನಿಸುವರು ಭೂಪಾಲ ಕೇಳೆಂದ ೧೦೦

ಹಿಂದೆ ಮಾಡಿದ ಸುಕೃತ ಫಲವೈ
ತಂದು ಸಾರುವವೋಲು ನಾನಾ
ಚಂದದಾಪತ್ತಿನಲಿ ಹರಿ ನಿಜಭಕ್ತ ಸಂತತಿಯ
ಮುಂದೆ ನಿಲುವವೊಲವನಿ ಪಾಲರ
ದಂದುಗದ ಹೊತ್ತಿನಲಿ ಗಜ ಹಯ
ವೃಂದವನೆ ಚಾಚುವನು ವಾಹಕನರಸ ಕೇಳೆಂದ ೧೦೧

ಪರ್ಬತವನೊಡೆದುಳಿಸಿ ಭೂಮಿಯ
ನಿಬ್ಬಗೆಯ ಮಾಡಿಸುತ ರಥ ಗಜ
ದೊಬ್ಬುಳಿಯ ಹರೆಗಡಿಸಿ ಕಾದಿಸುತಾನೆಗಳ ಮೇಲೆ
ಬೊಬ್ಬಿರಿದು ಶರವಳೆಯ ಸುರಿಸುರಿ
ದುಬ್ಬರದ ಬವರದೊಳಗಹಿತರಿ
ಗುಬ್ಬಸವನೆಸಗುವನೆ ಜೋಧನು ರಾಯ ಕೇಳೆಂದ ೧೦೨

ಕುದುರೆಗಳನಾರೈದು ರಥವನು
ಹದುಳಿಸುತ ಸಾರಥಿಯನೊಲವು
ತ್ತಿದಿರ ಮುರಿವುತ ತನ್ನ ಕಾಯಿದುಕೊಳುತ ಕೆಲಬಲನ
ಸದೆದು ಮರಳುವ ಲಾಗು ವೇಗದ
ಕದನ ಕಾಲಾನಲನವನು ತಾ
ಮೊದಲಿಗನಲೇ ರಥಿಕರಿಗೆ ಧೃತರಾಷ್ಟ್ರ ಕೇಳೆಂದ ೧೦೩

ಬಿಟ್ಟ ಸೂಟಿಯಲರಿ ನೃಪಾಲರ
ಮುಟ್ಟಿ ಮೂದಲಿಸುತ್ತ ಮೋಹಿದ
ಥಟ್ಟನೊಡೆಹಾಯ್ದು ಹಿತ ಬಲದೊಳಗಾನೆವರಿವರಿದು
ಹಿಟ್ಟು ಗುಟ್ಟುತ ಹೆಣನ ವಟ್ಟಾ
ವಟ್ಟಿ ಮಸಗಲು ಕಳನ ಚೌಕದ
ಲಟ್ಟಿಯಾಡಿಸಬಲ್ಲಡವ ರಾವುತನು ಕೇಳೆಂದ ೧೦೪

ಬೇಸರದೆ ಕಾಳೋರಗನನ
ಡ್ಡೈಸಿ ಕಟ್ಟಿರುವೆಗಳು ಖಂಡವ
ಸೂಸಿ ಕಡಿಕಡಿದೊಟ್ಟಿದಂದದಲಹಿತ ಬಲದೊಳಗೆ
ಓಸರಿಸದೊಳಹೊಕ್ಕು ಸಮರ ವಿ
ಳಾಸವನು ನೆರೆ ಮೆರೆದು ಕೇಶಾ
ಕೇಶಿಗೊದಗುವನವನೆ ಕಾಲಾಳರಸ ಕೇಳೆಂದ ೧೦೫

ಬರಲು ಕಂಡಡೆ ವಂದಿಸುತಲಂ
ತರಿಸಿ ಮಿಗೆ ಹತ್ತಿರವೆನಿಸದತಿ
ತರದ ದೂರವ ಸಾರದೀಪರಿ ಮಧ್ಯಗತನೆನಿಸಿ
ಪರಿವಿಡಿಯಲೋಲಗಿಸುತರಸನ
ಸಿರಿಮೊಗವನೀಕ್ಷಿಸುತ ಬೆಸಸಿದ
ನರವರಿಸದಾಕ್ಷಣಕೆ ಮಾಡುವನವನೆ ಸೇವಕನು ೧೦೬

ಕನಖಿ ಕುಷ್ಠ ಕುಶೀಲಕನು ಕು
ಬ್ಜನನು ವಿಧವಾಲಿಂಗಿ ದಾಸಿಯ
ತನು ವಿಕಾರಿಯನಂಗ ಹೀನನ ಪಂಗುಳಾಂಧಕನ
ಘನ ರುಜಾಂಗನ ಬಿಡುದಲೆಯ ರೋ
ಧಿನಿಯನುಪ್ಪವಡಿಸುವ ಸಮಯದೊ
ಳಿನಿಬರನು ಕಾಣ್ಬುದು ಮಹೀಶರಿಗಂಗವಲ್ಲೆಂದ ೧೦೭

ಕಲಶ ಕನ್ನಡಿ ಕರಿತುರಗ ಗೋ
ಕುಲ ವೃಷಭ ಬುಧನಿಚಯ ಗಿರಿ ಸಂ
ಕುಳ ಸುವಾಸಿನಿ ಮಾತೃಪಿತೃ ವರ ವಾಹಿನೀನಿಚಯ
ಜಲಧಿವಸನಚ್ಛತ್ರ ಉರ್ವೀ
ಲಲನೆಯರನೀಕ್ಷಿಸುವುದವನಿಪ
ತಿಲಕರುಪ್ಪವಡಿಸುವ ಸಮಯದೊಳರಸ ಕೇಳೆಂದ ೧೦೮

ಶ್ವಾನ ಕುಕ್ಕುಟ ಕಾಕ ಬಕ ಪವ
ಮಾನ ಖಗಪತಿ ದಿವಿಜ ರಜನಿ ಕೃ
ಶಾನುವಿನ ಗಾರ್ದಭನ ವೃಷಭನ ಶಿಂಶುಮಾರಕನ
ವಾನರನ ಹಯ ಕುಂಜರನ ಪಂ
ಚಾನನನ ಮೃಗಪೋತಕನ ಗುಣ
ವಾ ನರೇಂದ್ರನೊಳಿರಲು ಬೇಹುದು ಭೂಪ ಕೇಳೆಂದ ೧೦೯

ಪರಿಪರಿಯ ದಾನಂಗಳನು ಕರೆ
ಕರೆದು ಲೋಗರಿಗಿತ್ತು ಪರರನು
ಹೊರೆದು ತನ್ನಾಶ್ರಿತರನತಿಗಳೆದಾಪ್ತ ಬಾಂಧವರ
ಸರಕು ಮಾಡದೆ ಗರ್ವದಿಂದು
ಬ್ಬರಿಸುತಿಹ ಪಾತಕರ ಪದವಿಯ
ನರಸ ಬಣ್ಣಿಸಲಾರು ಬಲ್ಲರು ಯಮನ ನಗರಿಯಲಿ ೧೧೦

ಮೂರು ಕೋಟಿಯು ಕೋಟಿಧರ್ಮವ
ಮೀರದಿಹ ರೋಮಾಳಿ ಸಂಖ್ಯೆಯೊ
ಳಾರೆನ್ನದೆ ನಿಜಪತಿಯ ಸಹಗಮನದಲಿ ತನುವ
ಮಾರಿದಬಲೆಯರುಗಳ ದೆಸೆಯಿಂ
ದಾರುಮಡಿ ಸ್ವರ್ಗಾದಿ ಭೋಗವ
ಸೂರೆಗೊಂಬುದು ತಪ್ಪದವನೀಪಾಲ ಕೇಳೆಂದ ೧೧೧

ಆವನೊಬ್ಬನು ಸತ್ಯಕೋಸುಗ
ಭಾವಶುದ್ಧಿಯಲೊರಡಿಚುವ ಶಪ
ಥಾವಸಾನದಲವನಧರ್ಮದಲರ್ಥವನು ಯಮನು
ಓವನನ್ಯಾಯದಲಿ ಸೂರುಳ
ನೋವಿ ರಚಿಸಿದವಂಗೆ ಗತಿಯಿ
ನ್ನಾವುದೆಂಬುದನಾರು ಬಲ್ಲರು ಭೂಪ ಕೇಳೆಂದ ೧೧೨

ಕೋಪವೆಂಬುದನರ್ಥ ಸಾಧನ
ಕೋಪವೇ ಸಂಸಾರ ಬಂಧನ
ಕೋಪದಿಂದಿಹಪರದ ಸುಕೃತವು ಲಯವನೈದುವುದು
ಕೋಪವನು ವರ್ಜಿಸಲು ಬೇಹಂದು
ಕೋಪವುಳ್ಳವನಾವನಾಗಲಿ
ಕಾಪುರುಷನಿಹಪರಕೆ ಚಿತ್ತೈಸೆಂದನಾ ವಿದುರ ೧೧೩

ವೈದ್ಯನಲಿ ಮಾಂಸದಲಿ ದ್ವಿಜನಲಿ
ನಿದ್ರೆಯಲಿ ತರುವಿನಲಿ ವನದಲಿ
ವಿದ್ಯೆಯಲಿ ಪದವಿಯಲಿ ಸಂಖ್ಯಾಸಂಖ್ಯವೆಸರುಗಳ
ತದ್ವಿಷಯಕೆ ಮಹಾ ಸಬುದವನು
ಹೊದ್ದಿಸುವುದತಿಕಷ್ಟವವರಿಗೆ
ಸದ್ಯಫಲವದು ತಪ್ಪದವನೀಪಾಲ ಕೇಳೆಂದ ೧೧೪

ಗರುವ ಮಾನ್ಯನು ಮನಿತ ದೈವಾ
ಪರನು ಕಡುಸುಖಿ ಭೋಗಿ ರೂಪೋ
ತ್ಕರನು ಧನಿಕನು ರಾಜಪೂಜ್ಯನು ಕೀರ್ತಿವಲ್ಲಭನು
ಗುರುಜನಕೆ ಬಹು ವಿದ್ಯವುಳ್ಳವ
ನರಸ ಕೇಳ್ಳೆ ವಿದ್ಯೆಯಿಲ್ಲದ
ನರನು ನರಪಶುವವನ ಜನ್ಮ ನಿರರ್ಥಕರವೆಂದ ೧೧೫

ವಿದ್ಯೆ ಸತ್ಕುಲ ಬಹು ವಿವೇಕವು
ಬುದ್ಧಿ ಜಾಣ್ಮೆಯ ನುಡಿಯ ಸಡಗರ
ಶುದ್ಧಚಿತ್ತ ಸುಶೀಲ ಭುಜಬಲ ಭದ್ರನೆಂದೆನಿಸಿ
ಉದ್ಯೋಗವು ಮೊದಲಾದ ಗುಣಗಳಿ
ವಿದ್ದು ಫಲವೇನೀ ಜಗದ ತೊರೆ
ಮುದ್ದು ಹೊದ್ದದ ನರಗೆ ದಾರಿದ್ರಾಂಗನಾವರಗೆ ೧೧೬

ಧರೆಯೊಳಗೆ ಶುಚಿಯುಹನು ವೈಶ್ವಾ
ನರನು ಕಾಂತಾದರ್ಶಿಯುಹ ಕವಿ
ವರನು ಸುವ್ರತ ಕಾಮುನೆನಿಸುವ ಬ್ರಾಹ್ಮಣೋತ್ತಮನು
ಹರಿಹರಾತ್ಮಕ ನಾಮ ಕೀರ್ತನ
ವೆರಸಿ ಬದುಕುವನೊಬ್ಬನೀ ನಾ
ಲ್ವರುಗಳಲ್ಲದೆ ಭುವನದೊಳಗನ್ಯತ್ರವಿಲ್ಲೆಂದ ೧೧೭

ಹರಿಭಕುತಿ ಲೋಲುಪನೆನಿಸಿ ಶಂ
ಕರನ ಬದ್ಧ ದ್ವೇಷಿಯುಹ ಶಂ
ಕರನ ಭಕ್ತಿಯೊಳಧಿಕವಾಗಿಯು ವೈಷ್ಣವರ ಮೇಲೆ
ಎರಕವಿಲ್ಲದ ಕರ್ಮ ಚಾಂಡಾ
ಲರುಗಳೆಪ್ಪತ್ತೈದು ಕೋಟಿಯ
ನರಕದೊಳಗೋಲಾಡುತಿಹರೆಲೆ ರಾಯ ಕೇಳೆಂದ ೧೧೮

ಯತಿ ಕೆಡುಗು ದುಸ್ಸಂಗದಲಿ ಭೂ
ಪತಿ ಕೆಡುಗು ದುರ್ಮಂತ್ರಿಯಲಿ ವರ
ಸುತ ಕೆಡುಗು ಲಾಲನೆಗಳಲಿ ಕೃಷಿ ಕೆಡುಗುಪೇಕ್ಷೆಯಲಿ
ಮತಿ ಕೆಡುಗು ಮಧುಪಾನದಲಿ ಸ
ದ್ಗತಿ ಕೆಡುಗು ದುಶ್ಚರಿತದಲಿ ನಿಜ
ಸತಿ ಕೆಡುಗು ದುರ್ವ್ಯಸನದಲಿ ಭೂಪಾಲ ಕೇಳೆಂದ ೧೧೯

ಉಂಡು ತೀರಿಸಬೇಕು ತಾ ಮುಂ
ಕೊಂಡು ಮಾಡಿದ ಪುಣ್ಯ ಪಾಪದ
ತಂಡವನು ತರಹರಣವಿಲ್ಲದೆ ಭವ ಭವಂಗಳಲಿ
ಹಿಂಡಿ ಹಿಳಿವುದು ಬೆಂಬಿಡದೆ ಸಮ
ದಂಡಿಯಲಿ ಹಗೆ ಕೆಳೆಗಳೆನ್ನದೆ
ಗಂಡುಗೆಡಿಸದೆ ಬಿಡುವುದೇ ವಿಧಿಯೆಂದನಾ ವಿದುರ ೧೨೦

ಸ್ನೇಹಪೂರ್ವಕದಿಂದ ಮನದೊಳ
ಗಾಹಿಸಲು ಲಕ್ಷ್ಮೀಶನವರಿಗೆ
ದೇಹ ಪುರುಷಾರ್ಥಂಗಳಹವೆಲ್ಲಿದ್ದರಲ್ಲಲ್ಲಿ
ಈ ಹದನು ತಪ್ಪುವುದೆ ಕೂರ್ಮನ
ಮೋಹದಲಿ ತತ್ಸಂತತಿಗೆ ನಿ
ರ್ವಾಹವಹವೋಲರಸ ಚಿತ್ತೈಸೆಂದನಾ ವಿದುರ ೧೨೧

ಕೂಡಿದೆಡೆಯೊಲಕೃತ್ಯ ಶತವನು
ಜೋಡಿಸಿದವರು ಮಿತ್ರರುಗಳಿಗೆ
ಕೇಡ ಚಿಂತಿಸಿದವರುಗಳು ಪುರುಷಾರ್ಥವನು ತಮಗೆ
ಮಾಡಿದವರುಗಳಿಗೆ ವಿಘಾತಿಯ
ಹೂಡಿದವದಿರು ನರಕದೊಳಗೋ
ಲಾಡದಿಹರೇ ರಾಯ ಚಿತ್ತೈಸೆಂದನಾ ವಿದುರ ೧೨೨

ಕುಲಜನಾಗಲಕುಲಜನಾಗಲಿ
ಜಲರುಹಾಕ್ಷನ ನಾಮ ಕೀರ್ತನ
ದೊಳಗೆ ಬದುಕುವನಾವನಾತನೆ ಸುಕೃತಿಯೆಂಬವನು
ಉಳಿದ ಜಪ ತಪ ನಿಯಮ ಹೋಮಂ
ಗಳಲಿ ಸಂಸಾರಾರ್ಣವವನು
ಚ್ಚಳಿಸಬಹುದೇ ರಾಯ ಚಿತ್ತೈಸೆಂದನಾ ವಿದುರ ೧೨೩

ಜಾತರೂಪದಲೇಸು ಹೊಲ್ಲೆಹ
ವೀತಿಹೋತ್ರನ ದೇಹಕಾರಣ
ಘಾತವಾಗಿಹುದವಗೆ ಸದಸತ್ತುಗಳ ಭೇದವನು
ನೀತಿ ಮುಖದಿಂದರಿವುದುತ್ತಮ
ನೀತ ಮಧ್ಯಮನೀತ ಕನಿಯಸ
ನೀತವೆಂಬುದನರಸ ಚಿತ್ತೈಸೆಂದನಾ ವಿದುರ ೧೨೪

ಅವನಿಯಲಿ ಜನಜನಿತ ಧನ ಧಾ
ನ್ಯವನು ಕಳಹಲಗ್ನಿದು ಸಂತೋ
ಷವನು ಮಾಡುವ ಕಡೆಯಲೊಂದಕೆ ನೂರು ಮಡಿಯಾಗಿ
ಲವಲವಿಕೆ ಮಿಗಲಿತ್ತು ಸಪ್ತಾಂ
ಗವನು ಸಲಹುತ್ತಿರಲುಬೇಹುದು
ರವಿಯವೊಲು ಸಾವಿರ ಮುಖದೊಳವನೀಶ ಕೇಳೆಂದ ೧೨೫

ಇನನುದಯಿಸಲು ಪಶ್ಚಿಮಾದ್ರಿಯೊ
ಳನಲನೊಮ್ಮೆ ಹಿಮಾಂಶುವಾಗಲಿ
ಕನಕಗಿರಿಗಲ್ಲಾಟವಾಗಲಿ ಪರ್ವತಾಗ್ರದಲಿ
ವನಜ ವಿಕಸಿತವಾದೊಡೆಯು ಸ
ಜ್ಜನರುಗಳು ನುಡಿದೆರಡನಾಡರು
ಮನ ವಚನ ಕಾಯದಲಿ ಚಿತ್ತೈಸೆಂದನಾ ವಿದುರ ೧೨೬

ಹರನ ಕೊರಳಿಂಗಾಭರಣವಾ
ದುರಗ ಪವನಾಶನವೆನಿಸುವಂ
ತರಸ ನಿನ್ನಯ ಬಸುರ ಬಂದೇನಹರು ಪಾಂಡವರು
ನರಪಶುಗಳಾದರು ಕಣಾ ನೀ
ನರಲು ವನವಾಸದಲಿ ಸೊಪ್ಪನ
ವರತ ಮೆಲುವುದೆ ರಾಯ ಚಿತ್ತೈಸೆಂದನಾ ವಿದುರ ೧೨೭

ದೇವತಾಸ್ಥಾನದಲಿ ವಿಪ್ರ ಸ
ಭಾವಳಯದಲಿ ರಾಜಪುರುಷರ
ಸೇವೆಯಲಿ ರವಿ ಶಶಿಗಳುದಯಾಸ್ತಮಯ ಕಾಲದಲಿ
ಗೋವುಗಳ ನೆರವಿಯಲಿ ವರ ವೃಂ
ದಾವನದೊಳುಪಹತಿಯ ಮಾಡುವು
ದಾವ ಗುಣ ಗರುವರಿಗೆ ಚಿತ್ತೈಸೆಂದನಾ ವಿದುರ ೧೨೮

ನಾಯ ನಡುಬೋನವನು ನೆಚ್ಚಿ ವೃ
ಥಾಯ ಕೆಡಬೇಡಾ ಯುಧಿಷ್ಠಿರ
ರಾಯನನು ಕರೆಸುವುದು ಭೀಷ್ಮಾದಿಗಳ ಮುಂದಿಟ್ಟು
ನ್ಯಾಯಮುಖದಲಿ ಸಕಲ ರಾಜ್ಯ
ಶ್ರೀಯನರ್ಧವನಿತ್ತು ಬದುಕುವು
ದಾಯತಿಕೆಯೊಳಗಹುದು ಚಿತ್ತೈಸೆಂದನಾ ವಿದುರ ೧೨೯

ಚಕ್ರವರ್ತಿಗಳಾರಲೇ ಭೂ
ಚಕ್ರದೊಳಗವರಿಗೆ ಮುರಾರಿಯ
ಚಕ್ರವೇ ಬೆಸಗೆಯ್ವುದಲ್ಲದೆ ಪಾಂಡುತನಯರಿಗೆ
ಚಕ್ರಿ ತಾ ಬಂದವರ ಸೇವಾ
ಚಕ್ರದೊಳಗಿಹನಾ ಯುಧಿಷ್ಠಿರ
ಚಕ್ರವರ್ತಿಗದಾವನೈ ಸರಿಯೆಂದನಾ ವಿದುರ ೧೩೦

ನಳನೃಪತಿ ದಮಯಂತಿ ಸೀತಾ
ಲಲನೆ ರಾಘವದೇವ ದ್ರೌಪದಿ
ಕಲಿ ಯುಧಿಷ್ಠಿರದೇವನಿವರೀಂತಾರು ಮಾನಿಸರು
ಇಳೆಯೊಳುತ್ತಮ ಕೀರ್ತಿಗಳು ಜಾ
ವಳದ ಪುರುಷರೆ ಧರ್ಮಪುತ್ರನ
ಗೆಲುವ ಪರಿಯೆಂತೈ ಮಹಾದೇವೆಂದನಾ ವಿದುರ ೧೩೧

ಜನಪ ಕೇಳೈ ಸ್ಕಂದನನು ರಾ
ಮನನು ಹನುಮನ ಭೀಮಸೇನನ
ವಿನತೆಯಾತ್ಮಜನಿಂತಿದೈವರ ಭಾವಶುದ್ಧಿಯಲಿ
ನೆನೆದವರ ದುರಿತಂಗಳೋಡುವ
ವೆನಲು ನೀವೀ ಪವನಪುತ್ರನ
ನನುವರದೊಳೆಂತಕಟ ಜಯಿಸುವಿರೆಂದನಾ ವಿದುರ ೧೩೨

ಹರಿಹಯನು ಗುಹ ರಾಮ ಬಾಣಾ
ಸುರನು ದಶಶಿರ ಭೀಮಸೇನಾ
ದ್ಯರು ಕಣಾ ಗಿರಿಜಾಧಿನಾಥನ ಡಿಂಗರಿಗರಿವರು
ಸರಸವೇ ಮೃತ್ಯುಂಜಯನ ಕೂ
ಡರಸ ನಿನ್ನಳವರಿಯದೇ ಹರಿ
ಸುರರೊಡನೆ ಹಗೆಗೊಂಬನೇ ಧೃತರಾಷ್ಟ್ರ ಕೇಳೆಂದ ೧೩೩

ಬಲಿ ವಿಭೀಷಣ ಭೀಷ್ಮ ನಾರದ
ಫಲುಗುಣನು ಪ್ರಹ್ಲಾದದೇವನು
ಜಲರುಹಾಕ್ಷನ ನಚ್ಚು ಮೆಚ್ಚಿನ ಭಕುತರಿವರುಗಳು
ಸುಲಭವೇ ನಿನಗವರ ಕೂಡಣ
ಕಲಹ ಬೀಭತ್ಸುವಿನ ಕೈ ಮನ
ದಳವನರಿಯಾ ಕಂಡು ಕಾಣುತ ಮರುಳಹರೆಯೆಂದ ೧೩೪

ಎಲ್ಲಿ ಯೋಗಾಧಿಪತಿ ಮುರಹರ
ನೆಲ್ಲಿಯರ್ಜುನದೇವನಿಹನ
ಲ್ಲಲ್ಲಿ ಜಯಸಿರಿಯಲ್ಲದೇ ಬೇರಿಲ್ಲ ಕೇಳಿದನು
ಬಲ್ಲವರು ಬಲ್ಲರು ಕಣಾ ನೀ
ನಿಲ್ಲಿ ಪಾಂಡು ಕುಮಾರರಿಗೆ ಸರಿ
ಯಿಲ್ಲ ಬಲ್ಲೈ ಹಿಂದೆ ಬಂದ ವಿಪತ್ಪರಂಪರೆಯ ೧೩೫

ಹಿಂದೆ ಗೋಗ್ರಹಣದಲಿ ದ್ರುಪದನ
ನಂದನೆಯ ವೈವಾಹದಲಿ ಬಳಿ
ಸಂದ ಗಂಧರ್ವಕನ ದೆಸೆಯಲಿ ಘೋಷಯಾತ್ರೆಯಲಿ
ಬಂದ ಭಂಗವ ಕಂಡು ಕಂಡೇ
ನೆಂದು ಪಾಂಡು ಕುಮಾರರೊಡನನು
ಸಂಧಿಸುವೆ ಕಲಹವನು ಚಿತ್ತೈಸೆಂದನಾ ವಿದುರ ೧೩೬

ಸಕಲ ನೀತಿ ರಹಸ್ಯವನು ಸು
ವ್ಯಕುತವೆನಲರುಹಿದೆನು ತತ್ವಕೆ
ಯುಕುತಿಯಾದರೆ ನೆನೆವುದಿನ್ನು ಸನತ್ಸುಜಾತನನು
ಮುಕುತಿಗಮಳಬ್ರಹ್ಮವಿದ್ಯಾ
ಪ್ರಕಟವನು ನೆರೆ ಮಾಡಿ ಚಿತ್ತದ
ವಿಕಳತೆಯನೊಡೆಮೆಟ್ಟಿ ಸಲಹುವನೆಂದು ಬೋಧಿಸಿದ ೧೩೭

ನಾಲ್ಕನೆಯ ಸಂಧಿ

ಸೂ. ಮುನಿವರನ ಕರುಣದಲಿ ಕೌರವ
ಜನಪನಮಳಬ್ರಹ್ಮ ವಿದ್ಯೆಯ
ನನುಕರಿಸಿ ಚರಿತಾರ್ಥಭಾವದಲಿರುಳ ನೂಕಿದನು

ಕೇಳು ಜನಮೇಜಯ ಧರಿತ್ರೀ
ಪಾಲ ವಿದುರನ ಬೋಧೆಗಂಧನೃ
ಪಾಲನಂತಃಕರಣ ಶುದ್ಧಿಯನೆಯ್ದಿದನು ಬಳಿಕ
ಹೇಳು ಹೇಳಿನ್ನಾತ್ಮವಿದ್ಯೆಯ
ಮೂಲ ಮಂತ್ರಾಕ್ಷರದ ಬೀಜವ
ನಾಲಿಸುವೆನೆನೆ ನಗುತ ಕೈಮುಗಿದೆಂದನಾ ವಿದುರ ೧

ಅವಧರಿಸು ಪರತತ್ವ ವಿದ್ಯಾ
ವಿವರ ಭೇದವನನ್ಯ ಜಾತಿಗ
ಳಿವಗೆ ಸಲುವುದೆ ಮುನಿವರನ ಕರುಣೋದಯದಲಹುದು
ಅವರಿವರುಗಳ ಮುಖದಲಿದು ಸಂ
ಭವಿಸುವುದೆ ಬ್ರಹ್ಮೋಪದೇಶದ
ಹವಣ ಬಲ್ಲವನಾವನೈ ಧೃತರಾಷ್ಟ್ರ ಕೇಳೆಂದ ೨

ಒಬ್ಬನೇ ಬಲ್ಲವನು ಲೋಕದೊ
ಳಿಬ್ಬರಿಲ್ಲ ಸನತ್ಸುಜಾತನು
ಸರ್ವ ಗುಣ ಸಂಪೂರ್ಣನಾತನ ಭಜಿಸಿದೊಡೆ ನೀನು
ಸಭ್ಯನಹೆಯೆನಲಾ ಮುನಿಯ ಕ
ರ್ತವ್ಯ ಭಾವದೊಳರಸನಿರಲಾ
ವಿರ್ಭವಿಸಿದನು ವಿಪ್ರ ಕುಲ ಕಮಲಾರ್ಕನಾ ಕ್ಷಣಕೆ ೩

ನೆನೆಯಲೊಡನೆ ಸನತ್ಸುಜಾತನು
ಮನೆಗೆ ಬರಲಿದಿರೆದ್ದು ಕೌರವ
ಜನಕ ಮೈಯಿಕ್ಕಿದನೆನಗೆ ಬ್ರಹ್ಮೋಪದೇಶವನು
ಮುನಿಪ ನೀ ಕೃಪೆ ಮಾಡಬೇಕೆನ
ಲನುನಯದೊಳವನೀಪತಿಗೆ ಜನ
ಜನಿತವಹುದೆನಲರುಹಿದನು ಪರಲೋಕ ಸಾಧನವ ೪

ಚಿತ್ತವಿಸು ಧೃತರಾಷ್ಟ್ರನೃಪ ಪರ
ತತ್ವ ವಿದ್ಯಾ ವಿಷಯ ಭೇದವ
ಬಿತ್ತರಿಸುವೆನು ಸಕಲ ಸಚರಾಚರದೊಳಗೆ ನೀನು
ಉತ್ತಮಾಧಮವೆನ್ನದೇ ಕಾ
ಣುತ್ತ ಹರುಷ ವಿಷಾದದಲಿ ಮುಳು
ಗುತ್ತಿರದೆ ಸಮರಸದೊಳಿಹುದುಪದೇಶ ನಿನಗೆಂದ ೫

ಅವನಿಪತಿ ಕೇಳಾತ್ಮನಿಂ ಸಂ
ಭವಿಸಿತಂಬರವಂಬರದಲಾ
ಪವನ ಪವನನಲಗ್ನಿ ಅಗ್ನಿಯಲಾದುದಾ ಭುವನ
ಭುವನದಿಂ ಧರೆ ಧರಣಿಯಿಂದು
ದ್ಭವಿಸಿತೋಷಧಿ ಓಷಧಿಗಳಿಂ
ದವತರಿಸಿತಾನಾದಿ ಪುರುಷ ಪ್ರಕೃತಿ ವಿಕೃತಿಗಳು ೬

ನೇತ್ರ ನಾಸಿಕ ಪಾದ ಪಾಣಿ
ಶ್ರೋತ್ರವೆಂಬಿವು ತಮ್ಮೊಳೊಂದೇ
ಸೂತ್ರದಲಿ ಸಂಸ್ಪೃಷ್ಟವಾಗಿ ಸಮಾನಬುದ್ಧಿಯಲಿ
ಗಾತ್ರವಿಡಿದಿಹವೋಲು ವಿಶ್ವದ
ಮೈತ್ರಿಯಲಿ ಮನಸಂದು ಪಾತ್ರಾ
ಪಾತ್ರವೆನ್ನದೆ ಬೆರಸಿಬದುಕುವುದಧಿಕಗುಣವೆಂದ ೭

ಸೃಷ್ಟಿ ಸಂಹಾರದಲಿ ಭೂತದ
ಕಟ್ಟಳೆಗಳ ಗತಾಗತಿಗಳಲಿ
ಮುಟ್ಟಿಸಿದ ವಿದ್ಯೆಯಲವಿದ್ಯೆಯಲಪ್ರತಿಮನೆನಿಸಿ
ನಷ್ಟಿಯಲಿ ತುಷ್ಟಿಯಲಿ ಮನವನು
ಬಿಟ್ಟು ಹಿಡಿಯದೆ ಕಾಲಕರ್ಮವ
ಮೆಟ್ಟಿ ನಿಲೆ ಭಗವಂತನೆನಿಸುವೆ ರಾಯ ಕೇಳೆಂದ ೮

ಅಣುವಿನಲಿ ಲಘುವಿನಲಿ ಗುರುವಿನ
ಯೆಣಿಕೆಯಲಿ ಮಹಿಮೆಯಲಿ ಪ್ರಾಪ್ತಿಯ
ಭಣಿತೆಯಲಿ ಶೀಲತ್ವದಲಿ ಪ್ರಕಟಿತದ ಪರಿವಿಡಿಯ
ಕುಣಿಕೆಗಳಲಿ ವಶಿತ್ವದಲಿ ಮೆಂ
ಟಣಿಸಿ ರೇಚಕ ಪೂರಕದ ರಿಂ
ಗಣವನರಿವುದು ಯೋಗ ಸಿದ್ಧಿಗೆ ಲಕ್ಷಣವನೆಂದ ೯

ತ್ಯಜಿಸುವುದು ದುಸ್ಸಂಗವನು ನೀ
ಸೃಜಿಸುವುದು ಸತ್ಸಂಗವನು ಗಜ
ಬಜಿಸದಿರಹೋ ರಾತ್ರಿಯಲಿ ಧರ್ಮವನೆ ಸಂಗ್ರಹಿಸು
ಭಜಿಸು ನಿತ್ಯಾನಿತ್ಯ ವಸ್ತುವ
ವಿಜಯನಹೆ ಇಹಪರಕೆ ತತ್ವದ
ನಿಜವಿದೆಲೆ ಧೃತರಾಷ್ಟ್ರ ಚಿತ್ತೈಸೆಂದನಾ ಮುನಿಪ ೧೦

ಕಾಯವಿದು ನೆಲೆಯಲ್ಲ ಸಿರಿ ತಾ
ಮಾಯರೂಪಿನ ಮೃತ್ಯುದೇವತೆ
ಬಾಯ ಬಿಡುತಿಹಳಾವುದೀತನ ಕಾಲಗತಿಯೆಂದು
ದಾಯವರಿದು ಮಹಾತ್ಮರಿದಕೆ ಸ
ಹಾಯ ಧರ್ಮವ ರಚಿಸುವುದು ನಿ
ರ್ದಾಯದಲಿ ಕೈಸೂರೆಗೊಂಬುದು ಮುಕುತಿ ರಾಜ್ಯವನು ೧೧

ಕೆಟ್ಟ ಮಾರ್ಗದಲಿಂದ್ರಿಯಂಗಳ
ಚಿಟ್ಟುಮುರಿಯಾಟದಲಿ ಮನ ಸಂ
ದಷ್ಟವಾಗಿಯನಿತ್ಯ ಸಂಸಾರದ ಸುಖಕ್ಕೆಳಸಿ
ಹುಟ್ಟು ಸಾವಿನ ವಿಲಗದಲಿ ಕಂ
ಗೆಟ್ಟು ನಾನಾ ಯೋನಿಯಲಿ ತಟ
ಗುಟ್ಟಿ ಬಳಲುವುದುಚಿತವೇ ಭೂಪಾಲ ಕೇಳೆಂದ ೧೨

ಹಲವು ವರ್ಣದೊಳೆಸೆವ ಗೋ ಸಂ
ಕುಲದೊಳೊಂದೇ ವರ್ಣದಲಿ ಕಂ
ಗೊಳಿಸುವೀ ಕ್ಷೀರಾಮೃತವು ಮೈಗೊಂಡು ತೋರ್ಪಂತೆ
ಹೊಲಬುಗೆಟ್ಟ ಚರಾಚರಂಗಳ
ಸುಳಿವಿನಲಿ ಸುಳಿದಡಗಿ ಕಡೆಯಲಿ
ನಿಲುವ ನಿಜವೊಂದಲ್ಲದೆರಡಿಲ್ಲೆಂದನಾ ಮುನಿಪ ೧೩

ಅತಿಶಯದ ಸುಕೃತವನು ವಿರಚಿಸಿ
ಗತಿವಡೆದು ಸ್ವರ್ಗಾದಿ ಭೋಗೋ
ನ್ನತಿಕೆಯನು ಭೋಗಿಸಿದ ಸಮನಂತರದೊಳವನಿಯಲಿ
ಪತನ ತಪ್ಪದು ಮರಳಿ ಬಾರದ
ಗತಿಯನರಿದು ಮಹಾನುಭಾವರ
ಮತವಿಡಿದು ನಡೆವುದು ನಯವು ಕೇಳೆಂದನಾ ಮುನಿಪ ೧೪

ಸಕಲ ಧರ್ಮದ ಸಾರವನು ಮತಿ
ವಿಕಳನಾಗದೆ ಚಿತ್ತವಿಸು ಭಾ
ಧಕವದಾವುದು ನಿನಗದನು ನೀನನ್ಯರುಗಳಲ್ಲಿ
ಯುಕುತಿಯಿಂದದ ಮಾಡದಿರು ನಿ
ರ್ಮುಕುತನಹೆ ಸಂಸಾರದಲಿ ಸಾ
ಧಕವಿದೊಂದೇ ಸಕಲ ಜನಮತವೆಂದನಾ ಮುನಿಪ ೧೫

ಒಂದು ವಸ್ತುವನೆರಡು ಮಾಡುವೆ
ನೆಂದು ಬುದ್ಧಿಭ್ರಾಂತಿಯಲಿ ಮನ
ಸಂದು ಸಮ್ಯಗ್ಜ್ಞಾನದುದಯದ ನೆಲೆಯ ಕಾಣಿಸದೆ
ದಂದುಗಂಬಡುತಿಹುದು ತತ್ವದ
ಹಿಂದು ಮುಂದರಿಯದೆ ಮಹಾತ್ಮರು
ಬಂದ ಪಥದಲಿ ಬಾರದೇ ಕೆಡುತಿಹುದು ಜಗವೆಂದ ೧೬

ಪ್ರಣವದೊಂದಾ ವರ್ಣ ಮೂರರ
ಗುಣವಿಡಿದು ತೋರುವ ಚರಾಚರ
ವೆಣಿಸಬಾರದು ವಿಶ್ವದಲಿ ನಿಸ್ಯೂತವಾಗಿಹುದು
ಹಣೆದು ಬೀಳಲು ಹೊಳೆವ ಜ್ಯೋತಿ
ರ್ಗಣದವೊಲು ತೊಳತೊಳಗಿ ಬೆಳಗುವ
ಗುಣರಹಿತನ ನಿಜಸ್ವರೂಪವಿದೆಂದನಾ ಮುನಿಪ ೧೭

ನಳಿನಮಿತ್ರನು ಪಶ್ಚಿಮಾಂಬುಧಿ
ಗಿಳಿಯೆ ನಾನಾ ಪಕ್ಷಿಜಾತಿಗ
ಳುಲಿವುತೈತಂದೊಂದು ವೃಕ್ಷವನೇರಿ ರಾತ್ರಿಯನು
ಕಳೆದು ನಾನಾ ದೆಸೆಗೆ ಹರಿವವೊ
ಲಿಳೆಯ ಭೋಗದ ದೃಷ್ಟಿ ತೀರಿದ
ಬಳಿಕ ಲೋಕಾಂತರವನೆಯ್ದುವರೆಂದನಾ ಮುನಿಪ ೧೮

ಪೊಡವಿಯೊಳಗುದಯಿಸಿದ ದುಷ್ಕೃತ
ಬಿಡದು ಭೂಪರನದು ಪುರೋಹಿತ
ರೆಡೆಗೆ ಬಳಿಕಾ ಮೂರ್ಖ ಶಿಷ್ಯನ ದೋಷ ಗುರುವಿನದು
ಮಡದಿ ಮಾಡಿದ ಪಾತಕವು ಪತಿ
ಗೊಡಲಹುದು ಪರಮಾರ್ಥವಿದು ಪರಿ
ವಿಡಿಯನರಿಯದೆ ಕೆಡುವುದೀ ಜಗವೆಂದನಾ ಮುನಿಪ ೧೯

ದುರ್ಜನರಿಗಂಜುವುದು ಲೋಕವು
ಸಜ್ಜನರ ಲೆಕ್ಕಿಸದು ತಾರ್ಕ್ಷ್ಯನ
ಸೆಜ್ಜೆಯೊಳಗಿಹ ದಂದಶೂಕನನರ್ಚಿಸುವರೊಲಿದು
ಉಜ್ವಲಿತ ಭಕ್ತಿಯಲಿ ಬಹಳ ವಿ
ತರ್ಜೆಯಲಿ ಮೂಢಾತ್ಮರಿಕ್ಕಿದ
ಹಜ್ಜೆಯಿದು ಲೋಕಕ್ಕೆ ಕೇಳ್ ನೀನೆಂದನಾ ಮುನಿಪ ೨೦

ತಳಪಟದೊಳಾಯುಷ್ಯ ರಾಶಿಯ
ನಳೆವ ಕೊಳಗವು ಸೂರ್ಯನೆಂಬುದ
ತಿಳಿದಹೋರಾತ್ರಿಯಲಿ ಸಂಖ್ಯೆಯು ಸಲುಗೆಯುಂಕಿಸದೆ
ಬಳಸುವುದು ಸನ್ಮಾರ್ಗದಲಿ ಮುಂ
ಕೊಳಿಸುವುದು ಸದ್ಧರ್ಮದಲಿ ಕಳ
ವಳಿಸದಿರು ಷಡುವರ್ಗದಲಿ ಕೇಳೆಂದನಾ ಮುನಿಪ ೨೧

ನಷ್ಟಿಯಿದು ಸಂಸಾರದೊಳಗು
ತ್ಕೃಷ್ಟವಿದು ಮನ್ವಾದಿ ಮಾರ್ಗದ
ದೃಷ್ಟವಿದು ಲೋಕಾಂತರದ ಸುಖ ದುಃಖದೇಳಿಗೆಯು
ಹುಟ್ಟುಮೆಟ್ಟಿನ ಕಾಲಕರ್ಮದ
ಕಟ್ಟಳೆಯಿದೆಂದರಿದು ನಡೆವಂ
ಗಿಟ್ಟಣಿಸುವುದದಾವುದೈ ಹೇಳೆಂದನಾ ಮುನಿಪ ೨೨

ಶಿಲೆಯ ರೂಹನು ಮೂಢರುಗಳ
ಗ್ಗಳೆಯ ಪಾವಕನನು ಮಹೀಸುರ
ರೊಳೆಯೊಳಗೆ ಪರಮಾತ್ಮನೇ ಪರದೈವ ತಾನೆಂದು
ಒಲಿದು ಪೂಜಿಸುತಿಹರು ಹೃದಯಾಂ
ಗಳದೊಳಗೆ ವರಯೋಗಿಗಳು ಕೈ
ವಳಸುವುದು ಜನವೀ ಪ್ರಕಾರದೊಳರಸ ಕೇಳೆಂದ ೨೩

ಜ್ಞಾನಿಗಳನೊಡಬಡಿಸಬಹುದ
ಜ್ಞಾನಿಗಳನಹುದೆನಿಸಬಹುದು
ಜ್ಞಾನ ಲವವನು ಕೂಡಿಕೊಂಡಿಹ ದುರ್ವಿದಗ್ಧರನು
ಏನ ತಿಳುಹಲುಬಹುದು ವಿಷ್ವ
ಕ್ಸೇನಗಳವಲ್ಲರಸ ಮಿಕ್ಕಿನ
ಮಾನವರ ಪಾಡಾವುದೆಂದನು ಮುನಿ ನೃಪಾಲಂಗೆ– ೨೪

ದಾನವೊಂದಾ ಪಾಲನೆಯ ಫಲ
ದಾನವೊಂದೇ ಉಭಯವಿದರೊಳು
ದಾನದಿಂದಹುದಿಹಪರಂಗಳ ಸೌಖ್ಯ ಸಂಪದವು
ದಾನವೇ ಸಂಸಾರ ಸಾಧನ
ದಾನದಿಂ ಪಾಲನೆಯ ಫಲಕಿ
ನ್ನೇನನೆಂಬೆನು ಕಡೆಯೊಳಚ್ಯುತ ಪದವಿ ಫಲವೆಂದ ೨೫

ಅರಸನೊಡೆಯನು ದಂಡನಾಥನು
ಗುರು ಹಿರಿಯನುತ್ತಮನು ದೈವಾ
ಪರನು ಸಾಹಿತ್ಯನು ಸದಸ್ಯನು ಸತ್ಪುರುಷನೆಂದು
ಪರಿಪರಿಯ ನಾಮಂಗಳಲಹಂ
ಕರಿಸುವರು ಜೀವಾತ್ಮ ತೊಲಗಿದ
ಮರುದಿವಸ ಹೆಣನೆನ್ನರೇ ಹೇಳೆಂದನಾ ಮುನಿಪ ೨೬

ವರುಷ ಮೂರೊಳು ಮಾಸ ಮೂರರೊ
ಳಿರದೆ ಪಕ್ಷತ್ರಯದೊಳಗೆ ಬಂ
ದರುಹುವುದು ದಿನ ಮೂರರಲಿ ಸಂದೇಹ ಬೇಡಿದಕೆ
ಧರೆಯೊಳುತ್ಕಟ ಪುಣ್ಯ ಪಾಪೋ
ತ್ಕರದ ಫಲವಿದು ತಪ್ಪಬಾರದು
ಮರಳುವುದು ಪರಲೋಕದೆಸೆಗವನೀಶ ಕೇಳೆಂದ ೨೭

ಒಂದು ಭೂಪಿಂಡದಲಿ ನಾನಾ
ಚಂದದಿಂ ಪ್ರಾಣಿಗಳು ಜನಿಸುವು
ವೊಂದು ಜ್ಯೋತಿಸ್ಸಿನಲಿ ನಾನಾ ಜ್ಯೋತಿಯುದಿಸುವುವು
ಒಂದು ಪರವಸ್ತುವಿನ ಬಳಿಯಲಿ
ಬಂದುದಬುಜಭವಾಂಡ ಕೋಟಿಗ
ಳೆಂದೊಡವು ಬೇರಿಲ್ಲ ಸರ್ವವು ವಿಷ್ಣುಮಯವೆಂದ ೨೮

ತಾನಿದಿರು ಹಗೆ ಕೆಳೆ ವಿವೇಕ
ಜ್ಞಾನವಜ್ಞಾನಂಗಳಿಹಪರ
ಹಾನಿ ವೃದ್ಧಿಯ ಮಾರ್ಗದಲಿ ತಾನೇಕ ಚಿತ್ತದಲಿ
ದಾನ ಧರ್ಮ ಪರೋಪಕಾರ ವಿ
ಧಾನ ದೀಕ್ಷಾಕರ್ಮನಿಷ್ಠರು
ಮಾನನೀಯರಲೇ ಮಹೀಪತಿ ಕೇಳು ನೀನೆಂದ ೨೯

ಕರಣ ಗುಣ ಸಂಹರಣ ಸಂಧ್ಯಾಂ
ತರದವಸ್ಥಾಂತರದ ಲೋಕೋ
ತ್ಕರದ ತಾಪತ್ರಯದ ಲಕ್ಷಣ ಲಕ್ಷಿತವನರಿದು
ಪರಿವಿಡಿಯ ಮೂರ್ತಿತ್ರಯಂಗಳ
ಗುರು ಲಘುವನಾರೈದು ನಡೆವಂ
ಗರಿದೆನಿಸುವುದದಾವುದೈ ಹೇಳೆಂದನಾ ಮುನಿಪ ೩೦

ವೇದ ನಾಲ್ಕಾಶ್ರಮವು ತಾ ನಾ
ಲ್ಕಾದಿಮೂರುತಿ ನಾಲ್ಕು ವರ್ಣ ವಿ
ಭೇದ ನಾಲ್ಕಾ ಕರಣ ನಾಲುಕುಪಾಯ ನಾಲ್ಕರಲಿ
ಭೇದಿಸಲು ಪುರುಷಾರ್ಥ ನಾಲ್ಕರ
ಹಾದಿಯರಿದು ವಿಮುಕ್ತ ನಾಲುಕ
ನೈದುವನು ಸಂದೇಹವೇ ಹೇಳೆಂದನಾ ಮುನಿಪ ೩೧

ಭೂತ ವರ್ಣಸ್ಥಾನ ಸರ್ಗ ನಿ
ಪಾತವದರೊಳು ಕೃತ್ಯಗಳ ಸಂ
ಜಾತಮುಖವಾವರಣ ಶರ ಸಂಗತಿಯ ಸೋಹೆಗಳ
ಧಾತು ಮೂಲಾದಿಗಳನರಿವುದು
ಪ್ರೀತಿಯಿಂದಿಹಪರವ ಗೆಲುವುದು
ಭೂತಳದೊಳುತ್ತಮವಲೇ ಭೂಪಾಲ ಕೇಳೆಂದ ೩೨

ಆರು ಗುಣ ಋತುವರ್ಣ ವರ್ಗವ
ದಾರು ದರ್ಶನ ಪಾತ್ರವಂಗವ
ದಾರು ಭೇದದ ಬಗೆಯನರಿವುದು ಶಿಷ್ಟಮಾರ್ಗದಲಿ
ತೋರುವೀ ಮಾಯಾ ಪ್ರಪಂಚವ
ಮೀರಿ ಕೇಡಿಲ್ಲದ ಪದವ ಕೈ
ಸೇರೆಗೊಂಬುದು ಪರಮ ಮಂತ್ರವಿದೆಂದನಾ ಮುನಿಪ ೩೩

ಜಲಧಿ ಮಾತೃಕೆ ವಾರ ಕುಲಗಿರಿ
ಗಳು ವಿಭಕ್ತಿ ದ್ವೀಪ ಸಪ್ತಾ
ವಳಿ ಮುನೀಶ್ವರರುಗಳ ಧಾತು ಗಡಣದ ವೇದಿಗಳ
ತಿಳಿದು ಕಾಲದ ಗತಿಯ ಗಮಕಂ
ಗಳನರಿದು ನಡೆವವರುಗಳು ನಿ
ರ್ಮಳದಲೆಡಹದೆ ಬೆರೆಸಿಕೊಂಬರು ಮುಕ್ತಿ ರಾಜ್ಯವನು ೩೪

ಕಾಯ ದಿಗ್ಬಂಧ ಪ್ರಣಾಮ ವಿ
ಧೇಯವರ್ಜನೆ ಯೋಗಸಿದ್ಧಿ ನಿ
ಕಾಯ ನಾಲ್ಕರ ಇಂದ್ರಿಯಸ್ಥಿತಿ ಗತಿಯನಾರೈದು
ಆಯವನು ವಿವರಿಸುತ ಮೇಲಣ
ಬೀಯವಿದು ತನಗೆಂಬುದನು ನಿ
ರ್ದಾಯದಲಿ ನಿಶ್ಚಯಿಸಬೇಹುದು ರಾಯ ಕೇಳೆಂದ ೩೫

ನವ ನವ ವ್ಯೂಹಂಗಳಬುಜೋ
ದ್ಭವನ ಪಾಳಿ ವಿಖಂಡ ನವರಸ
ನವವಿಧಗ್ರಹ ನಾಟಕಂಗಳ ಲಕ್ಷಣವನರಿದು
ನವವಿಧಾಮಳ ಭಕ್ತಿರಸವನು
ಸವಿದು ನಿತ್ಯಾನಿತ್ಯ ವಸ್ತುವ
ನವರಸವನಾರೈದು ನಡೆವುದು ಭೂಪ ಕೇಳೆಂದ ೩೬

ಹತ್ತು ಮುಖದಲಿ ಲೋಕದೊಳಗು
ತ್ಪತ್ತಿಯಾದ ಚರಾಚರಂಗಳ
ಉತ್ತಮಾಧಮರೆನ್ನದೇ ಹರಿ ಸರ್ವಗತನಾಗಿ
ಸುತ್ತುವನು ನಾನಾ ತೆರದಲಿ ವಿ
ಚಿತ್ರಚರಿತನು ಕಪಟ ನಾಟಕ
ಸೂತ್ರಧಾರಕನೆಂದರಿದು ಸುಖಿಯಾಗು ನೀನೆಂದ ೩೭

ಲೇಸು ಮಾಡಿದಿರೆನ್ನ ಚಿತ್ತದ
ಬೇಸರಿಕೆ ಬಯಲಾಯ್ತು ನಿಮ್ಮುಪ
ದೇಶದಿಂದ ಕೃತಾರ್ಥನಾದೆನು ಗೆಲಿದೆನಿಹಪರವ
ಗಾಸಿಯಾದುದು ರಾಗ ಲೋಭದ
ಮೀಸಲಳಿದುದು ನಿಮ್ಮ ದೆಸೆಯಿಂ
ದೇಸು ಧನ್ಯರೊ ನಾವು ಚಿತ್ತೈಸೆಂದನಾ ಭೂಪ ೩೮

ಸ್ವರ್ಗವಾವುದು ನರಕವಾವುದು
ವಿಗ್ರಹದಲಹ ಸಿದ್ಧಿ ಯಾವುದ
ನುಗ್ರಹಿಸಲೇನಹುದು ಪಾತ್ರಾ ಪಾತ್ರವೆಂದೇನು
ಉಗ್ರವಾವುದು ದೈವದೊಳಗೆ ಸ
ಮಗ್ರವಾವುದು ಧರ್ಮದೊಳಗ
ವ್ಯಗ್ರದಿಂದುಪದೇಶಿಸಲು ಬೇಕೆಂದನಾ ಭೂಪ ೩೯

ಸುಲಭನತಿ ಸಾಹಿತ್ಯ ಮಂಗಳ
ನಿಳಯನಗಣಿತ ಮಹಿಮನನ್ವಯ
ತಿಲಕನನುಪಮಚರಿತ ದೈವಾಪರನು ಪುಣ್ಯನಿಧಿ
ಕುಲಯುತನು ಕೋವಿದನು ಕರುಣಾ
ಜಲಧಿ ಕೌತುಕ ಯುಕ್ತಿವಿದನೆಂ
ದಿಳೆ ಹೊಗಳುತಿರಲದುವೆ ಕೇಳೈ ಸ್ವರ್ಗ ತಾನೆಂದ ೪೦

ಜಾತಕನು ಪತಿತನು ಕೃತಘ್ನನು
ಘಾತಕನು ಮರ್ಮನು ದುರಾಢ್ಯನ
ಭೀತಕನು ದೂಷಕನು ದುರ್ಜನನಪ್ರಯೋಜಕನು
ನೀತಿಹೀನನು ಜಾತಿಧರ್ಮ ಸ
ಮೇತ ದೈವ ದ್ರೋಹಿಯೆಂಬುದು
ಭೂತಳದೊಳೇ ನರಕ ಚಿತ್ತೈಸೆಂದನಾ ಮುನಿಪ ೪೧

ದೇಹವಿಡಿದಿಹ ಧರ್ಮವದು ನಿ
ರ್ದೇಹದಲಿ ದೊರಕುವುದೆ ಮಾನವ
ದೇಹವೇ ಸಾಧನ ಸಕಲ ಪುರುಷಾರ್ಥಶೀಲರಿಗೆ
ಐಹಿಕಾಮುಷ್ಮಿಕದ ಗತಿ ಸಂ
ಮೋಹಿಸುವುದು ಶರೀರದಲಿ ಸಂ
ದೇಹವೇ ಧೃತರಾಷ್ಟ್ರ ಚಿತ್ತೈಸೆಂದನಾ ಮುನಿಪ ೪೨

ಗರುಡ ಪಂಚಾಕ್ಷರಿಯೊಳಲ್ಲದೆ
ಗರಳ ಭಯವಡಗುವುದೆ ವಿಷ್ಣು
ಸ್ಮರಣೆಯಿಂದಲ್ಲದೆ ಮಹಾ ಪಾತಕಕೆ ಕಡೆಯಹುದೆ
ಹಿರಿದು ಸಂಸಾರಾಂಬುಧಿಯನು
ತ್ತರಿಸುವೊಡೆ ಗುರುಮುಖದೊಳಲ್ಲದೆ
ನಿರತಿಶಯವಿನ್ನಾವುದೈ ಹೇಳೆಂದನಾ ಮುನಿಪ ೪೩

ತನ್ನ ಮನೆಯಲಿ ಮೂರ್ಖನತಿ ಸಂ
ಪನ್ನ ಪೂಜ್ಯನು ಭೂಮಿಪಾಲನು
ತನ್ನ ದೇಶದೊಳಧಿಕ ಸ್ವಗ್ರಾಮದಲಿ ಪ್ರಭು ಪೂಜ್ಯ
ಭಿನ್ನವಿಲ್ಲದೆ ಹೋದ ಠಾವಿನೊ
ಳನ್ಯವೆನಿಸದೆ ವಿಶ್ವದೊಳು ಸಂ
ಪನ್ನ ಪೂಜಾಪಾತ್ರರೈ ವಿದ್ವಾಂಸರುಗಳೆಂದ ೪೪

ಒಬ್ಬನಹನ್ಯೆ ಶೂರ ನೂರರೊ
ಳೊಬ್ಬನಹ ಸಾವಿರಕೆ ಪಂಡಿತ
ನೊಬ್ಬನಹನ್ಯೆ ವಕ್ತ ಶತ ಸಾವಿರಕೆ ಲೋಕದಲಿ
ಒಬ್ಬ ದಾನಿಯು ಕಾಣೆ ನಾನಿ
ನ್ನೊಬ್ಬರೊಬ್ಬರಿಗೊಂದು ಗುಣವದು
ಸರ್ಬಗುಣ ಸಂಪನ್ನರೈ ವಿದ್ವಾಂಸರುಗಳೆಂದ ೪೫

ಸತಿಯರಿಗೆ ಗತಿ ಯಾವುದೈ ನಿಜ
ಪತಿಗಳಲ್ಲದೆ ವಿಪ್ರಜಾತಿಗೆ
ಹುತವಹನು ವರ್ಣತ್ರಯಕೆ ಭೂದೇವರುಗಳಿರಲು
ಕ್ಷಿತಿಯೊಳತಿಶಯವಾವುದೈ ಭೂ
ಪತಿಯೆ ಕೇಳಿಹಪರಕೆ ಸುಖ ಸಂ
ಗತಿಯನೊಲುವೊಡೆ ಪೂಜಿಸುವುದೈ ಬ್ರಾಹ್ಮಣೋತ್ತಮರ ೪೬

ಚೋರನನು ಕಂಟಕನ ಪಿಸುಣನ
ಜಾರನನು ಷಂಡನನು ಸಮಯ ವಿ
ಕಾರ ಭೇದಿಯನಿಂತರುವರನು ಕಂಡು ಮನ್ನಿಸದೆ
ದೂರದಲಿ ವರ್ಜಿಸುವುದು ಬಹಿ
ಷ್ಕಾರಿಗಳು ಸರ್ವಕ್ಕಿವರುಗಳು
ಸಾರಿದುದು ಸರ್ವೇಶ್ವರನ ಮತವರಸ ಕೇಳೆಂದ ೪೭

ಮೊದಲಲಾ ಮಾಹಿಷಿಕನನು ಮ
ಧ್ಯದಲಿ ವೃಷಲೀ ವಲ್ಲಭನನಂ
ತ್ಯದಲಿ ವಾಗ್ಜೀವಕನ ಕಂಡವರುಗಳ ಭಾಗ್ಯನಿಧಿ
ಕದಡಿ ಹರಿವುದು ಕಂಡ ಮುಖದಲಿ
ಸದಮಳಿತ ಶಾಸ್ತ್ರಾರ್ಥ ನಿಶ್ಚಯ
ವಿದನರಿದು ನಡೆವುದು ನಯವು ಭೂಪಾಲ ಕೇಳೆಂದ ೪೮

ಕುಲಮಹಿಷಿ ದುರ್ಮಾರ್ಗ ಮುಖದಲಿ
ಗಳಿಸಿದರ್ಥವನುಂಡು ಕಾಲವ
ಕಳೆವ ನಿರ್ಭಾಗ್ಯರು ಕಣಾ ಮಾಹಿಷಿಕರೆಂಬವರು
ಇಳೆಯೊಳವರೊಡನಾಡಿದವದಿರು
ಗಳಿಗೆ ನರಕಾರ್ಣವದೊಳಾಳಂತ
ಮುಳುಗುತಿರುತಿಹುದಲ್ಲದೇ ಗತಿಯಿಲ್ಲ ಕೇಳೆಂದ ೪೯

ದೈವದಾಧೀನದಲಿ ಜಗವಾ
ದೈವ ಮಂತ್ರಾಧೀನ ಮಂತ್ರವು
ಭೂಮಿಬುಧರಾಧೀನವಾಗಿಹುದಾಗಿ ಲೋಕದಲಿ
ದೈವವೇ ಬ್ರಾಹ್ಮಣನದಲ್ಲದೆ
ಭಾವಿಸಲು ಬುಧರಿಂದಧಿಕವಹ
ದೈವವೆಂಬುದದಾವುದೈ ಹೇಳೆಂದನಾ ಮುನಿಪ ೫೦

ಕೆಲಸ ಗತಿಯಲಿ ಕಡೆದ ಶಿಲೆಯನು
ಕಲುಕುಟಿಕನಿಳುಹುವನದಲ್ಲದೆ
ಹಲವು ಪರಿಯಿಂದದನು ಲೋಕಕೆ ದೈವವನು ಮಾಡಿ
ಸಲಿಸುವವರುಂಟೇ ಸುರಾಸುರ
ರೊಳಗೆ ವಿಪ್ರೋತ್ತಮರುಳಿಯೆ ಜಗ
ದೊಳಗೆ ದೈವವದಾವುದೈ ಹೇಳೆಂದನಾ ಮುನಿಪ ೫೧

ಎಣಿಸಬಹುದೂರ್ವರೆಯ ಸೈಕತ
ಮಣಿಯನೊಯ್ಯಾರದಲಿ ಗಗನಾಂ
ಗಣದೊಳೈತಹ ವೃಷ್ಟಿಬಿಂದುವ ಲೆಕ್ಕಗೊಳಬಹುದು
ಎಣಿಸಬಾರದದೊಂದು ದಿವಿಜರ
ಗಣಕೆಗೋಚರವಾಗಿ ಸದ್ಬ್ರಾ
ಹ್ಮಣನೊಳೊಬ್ಬನ ರಕ್ಷಿಸಿದ ಫಲವರಸ ಕೇಳೆಂದ ೫೨

ಜಾತಿಧರ್ಮವನನುಸರಿಸಿ ವರ
ಮಾತೃಪಿತೃ ಪರಿಚರಿಯದಲಿ ಸಂ
ಪ್ರೀತಿವಡೆಯುತೆ ಪರಗುಣಸ್ತುತಿ ನಿಂದೆಗಳನುಳಿದು
ಭೂತನಾಥನ ಭಕುತಿಯಲಿ ವಿ
ಖ್ಯಾತವಹ ಗುರುದೈವದಲಿ ಭಯ
ಭೀತಿ ಹರಿದಿರಲದುವೆ ಕೇಳ್ ಸುಕೃತಕ್ಕೆ ಕಡೆಯೆಂದ ೫೩

ಅರ್ಥದಿಂದಹ ಸಿದ್ಧಿ ಯಾವುದ
ನರ್ಥವೆಂಬುದದೇನು ತನಗೆ
ಸ್ವಾರ್ಥವಾರು ಪರಾರ್ಥದಿಂದಹುದಾವುದವನಿಯಲಿ
ತೀರ್ಥವಾವುದು ವಿಪ್ರರೊಳಗೆ ಸ
ಮರ್ಥರಾರು ಸುಧಾತ್ರಿಯೊಳಗೆಯು
ವ್ಯರ್ಥಜೀವಿಗಳಾರು ಚಿತ್ತೈಸೆಂದನಾ ಮುನಿಪ ೫೪

ಧನವನುಳ್ಳ ಮಹಾತ್ಮನಾವುದ
ನೆನೆದೊಡದು ಕೈ ಸಾರುವುದು ನಿ
ರ್ಧನಿಕ ಬಯಸಿದ ಬಯಕೆ ಬಯಲಹುದಲ್ಲದೇ ಬೇರೆ
ಧನಿಕನಂತೆ ಸಮಸ್ತ ಸುಖ ಸಂ
ಜನಿಸುವುದೆ ಸರ್ವಕ್ಕೆ ಸಾಧನ
ಧನವದಲ್ಲದೆ ಭುವನದೊಳಗನ್ಯತ್ರವಿಲ್ಲೆಂದ ೫೫

ವ್ಯರ್ಥರುಗಳೊಡನಾಟ ತಮ್ಮ
ಸ್ವಾರ್ಥವಿಲ್ಲದರುಗಳ ಕೂಟ ಪ
ರಾರ್ಥದಿಂದುಜ್ಜೀವಿಸಿದವನ ಬದುಕು ಲೋಕದಲಿ
ಅರ್ಥವಿಲ್ಲದ ಸಿರಿಯು ಸಡಗರ
ಅರ್ಥಿಯಿಲ್ಲದ ಬಾಳುವೆಗಳಿವ
ನರ್ಥ ಪಾರಂಪರೆಯಲೇ ಕೇಳೆಂದನಾ ಮುನಿಪ ೫೬

ಮಾಡುವುದು ಧರ್ಮವನು ಸುಜನರ
ಕೂಡುವುದು ಪರಪೀಡೆಯೆಂಬುದ
ಮಾಡಲಾಗದು ಕರಣ ಮೂರರೊಳಲ್ಲದಾಟವನು
ಆಡಲಾಗದು ದಸ್ಯುಜನವನು
ಕೂಡಲಾಗದಿದೆಂಬ ಮಾರ್ಗವ
ನೋಡಿ ನಡೆವುದು ತನಗೆ ಪರಮ ಸ್ವಾರ್ಥಕರವೆಂದ ೫೭

ಕರಿತುರಗ ಮೊದಲಾದ ವಸ್ತುಗ
ಳರಮನೆಗಳಲಿ ಪುತ್ರ ಮಿತ್ರರು
ತರುಣಿಯರು ಸಹಭವರು ಗೋತ್ರಜರಡವಿಯೊಳಗಿಕ್ಕಿ
ತಿರುಗುವರು ನಿಜಸುಕೃತ ದುಷ್ಕೃತ
ವೆರಡು ಬೆಂಬಿಡವಲ್ಲದುಳಿದುದ
ನರಸ ಬಲ್ಲವರಾರು ಧರ್ಮರಹಸ್ಯ ವಿಸ್ತರವ ೫೮

ಧರ್ಮದಾಧಾರದಲಿಹುದು ಜಗ
ಧರ್ಮವುಳ್ಳನನಾಶ್ರಯಿಸುವುದು
ಧರ್ಮವೇ ನೂಕುವುದು ಜನ್ಮಾಂತರದ ಪಾತಕವ
ಧರ್ಮವೇ ಸರ್ವ ಪ್ರತಿಷ್ಠಿತ
ಧರ್ಮವೆಂಬುದು ಪರಮಪದವಾ
ಧರ್ಮವನು ಬಿಟ್ಟಿಹುದು ಬದುಕಲ್ಲರಸ ಕೇಳೆಂದ ೫೯

ಪರಿಪರಿಯ ಯಜ್ಞವನು ವಿರಚಿಸಿ
ಸುರಪತಿಯ ಸಂತುಷ್ಟಿಬಡಿಸಲು
ಸುರಿವನವ ಸಂಪೂರ್ಣವಾಗಿ ಸುವೃಷ್ಟಿಯನು ಜಗಕೆ
ಹರಿಹಯನು ಸಸ್ಯಾಧಿಕಂಗಳ
ಹೊರೆಯಲೋಸುಗ ಮೃಗೆ ಮೃಯಾ
ಗಿರುತಿಹನು ಭುವನದ್ವಯದೊಳವನೀಶ ಕೇಳೆಂದ ೬೦

ಎತ್ತಲಾನು ಸುತೀರ್ಥವೆಂಬುದ
ಚಿತ್ತವಿಸುವೊಡೆ ಸರ್ವ ತೀರ್ಥದ
ಸತ್ತ್ವವನು ಸನ್ನಿಹಿತವಾಗವಧರಿಸು ನೀನದನು
ವಿಸ್ತರಿಸುವೆನು ವಿಪ್ರಪಾದ ವಿ
ಮುಕ್ತ ವಿಮುಖೋದರವನಾವನು
ನೆತ್ತಿಯಲಿ ಧರಿಸಿದವನವನು ಕೃತಾರ್ಥನಹನೆಂದ ೬೧

ಶರಧಿಯೊಳು ಹರಿ ಯೋಗನಿದ್ರೆಯೊ
ಳಿರಲು ಭೃಗುವೈತಂದು ಲಕ್ಷ್ಮೀ
ಧರನ ವಕ್ಷಸ್ಥಳವನೊದೆಯಲು ಮುನಿಯ ಚರಣವನು
ಸಿರಿಯುದರದೊಳಗೊತ್ತಿ ಧರಣೀ
ಸುರರ ಮೆರೆದನು ತೀರ್ಥಪಾದವ
ಧರೆಯೊಳಗೆ ಬುಧರಿಂದಧಿಕವಹ ತೀರ್ಥವಿಲ್ಲೆಂದ ೬೨

ಮಾಡುತಿಹ ಯಜ್ಞವನು ಪರರಿಗೆ
ಮಾಡಿಸುವ ವೇದಾಧ್ಯಯನವನು
ಮಾಡುತಿಹ ತದ್ವಿಷಯದಲಿ ಯೋಗ್ಯರನು ಮಾಡಿಸುವ
ಮಾಡುತಿಹ ದಾನವನು ಲೋಗರು
ನೀಡುತಿರಲೊಳಕೊಂಬ ಗುಣವನು
ಕೂಡಿಕೊಂಡಿಹನೇ ಸಮರ್ಥನು ವಿಪ್ರರೊಳಗೆಂದ ೬೩

ವೇದಪುರುಷನ ವಿಗ್ರಹದಲಿ ವಿ
ಭೇದವಿಲ್ಲದೆ ಬಿಸಜ ಸಂಭವ
ನಾದಿಯಾದ ಸಮಸ್ತದೇವರು ನೆಲೆವನೆಗಳಾಗಿ
ನೇದುಕೊಂಡಿಹರಂತು ಕಾರಣ
ವಾದಿಸದೆ ವಿಪ್ರೋತ್ತಮರನಭಿ
ವಾದಿಸುವುದುತ್ತಮವಲೇ ಕೇಳೆಂದನಾ ಮುನಿಪ ೬೪

ಯುವತಿಯರು ಗಾಯಕರು ಕವಿಗಳು
ತವತವಗೆ ಕೈವಾರಿಸುವರಾ
ವವನವನೆ ಯಾವಗಲು ದೂಷಕನಿಹಪರಂಗಳಿಗೆ
ಇವರು ಮೂವರು ನಿಂದಿಸುವರಾ
ವವನವನು ಸರ್ವಜ್ಞನೆನಿಸುವ
ನವನಿಪತಿ ಚಿತ್ತೈಸು ಧರ್ಮರಹಸ್ಯವಿಸ್ತರವ ೬೫

ಜ್ಞಾತವಾವುದಜ್ಞಾತವಾವುದು
ನೀತಿ ಯಾವುದನೀತಿ ಯಾವುದು
ದ್ವೈತವಾವುದದ್ವೈತವಾವುದು ವೈದಿಕಾಂಗದಲಿ
ಖ್ಯಾತಿಯಾವುದಖ್ಯಾತಿ ಯಾವುದು
ಜಾತಿಯಾವುದಜಾತಿ ಯಾವುದು
ಭೂತಳದೊಳವನೀಶ ಚಿತ್ತೈಸೆಂದನಾ ಮುನಿಪ ೬೬

ಧರಣಿಯಮರರ ಸೇವೆಯನು ವಿ
ಸ್ತರಿಸಿ ಸತ್ಕಾರದಲವರನಾ
ದರಿಸಿ ಬಹುಮಾನವನು ವಿರಚಿಸಿದಾ ಮಹಾತ್ಮರಿಗೆ
ಎರವಹುದೆ ಸ್ವರ್ಗಾಪವರ್ಗದ
ಸಿರಿಯದೆಂಬುದನರಿದು ನಡೆವು
ಗರಿದೆನಿಸುವದದಾವುದೈ ಹೇಳೆಂದನಾ ಮುನಿಪ ೬೭

ಯೋನಿಮುಖವೆಂಬತ್ತುನಾಲ್ಕು ನ
ವೀನ ಜನ್ಮಂಗಳೊಳಗುದಯಿಸಿ
ಹಾನಿ ವೃದ್ಧಿಗಳರಿದು ಜ್ಞಾನದ ಕಡೆಯ ಕಣೆಯದಲಿ
ಮಾನವರ ಬಸುರಿನಲಿ ಬಂದ
ಜ್ಞಾನತರರಾಗಳಿವುದಿದು ಕ
ರ್ಮಾನುಗತವಾಗಿಹುದಲೇ ಭೂಪಾಲ ಕೇಳೆಂದ ೬೮

ಪಾನದಿಂ ಸೂಕರನು ಬಧಿರವ
ಮಾನದಿಂ ಕ್ಷಯರೋಗಿ ಗುರುಜನ
ಹಾನಿಯಿಂದವೆ ಕುಷ್ಠಿ ಗರ್ವದಿ ಕುಕ್ಕುಟಾಹ್ವಯನು
ಹೀನಗತಿಯಿಂದುರಗ ನಾನಾ
ಯೋನಿಗಳಲಿ ಚರಾಚರವು ಕ
ರ್ಮಾನುಗತವಾಗುದಯಿಸುವುದನವನೀಶ ಕೇಳೆಂದ ೧೯

ಪರರ ಪಟುತನವಾದದಲಿ ಮೂ
ಗರವೊಲಿಹ ಪರ ವಚನದುತ್ಕಟ
ವೊರೆಗೆ ಬಧಿರತ್ವವನು ಪರಗುಣ ದೋಷ ದರುಶನವು
ದೊರಕಿದೊಡೆ ಜಾತ್ಯಂಧನೆನಿಸುವ
ಪುರುಷನಾವವನವನು ಸಾಕ್ಷಾ
ತ್ಪರಮಪುರುಷೋತ್ತಮನಲೇ ಭೂಪಾಲ ಕೇಳೆಂದ ೨೦

ಇಷ್ಟ ಸಂತರ್ಪಣವ ಮಾಡಿ ವಿ
ಶಿಷ್ಟಪೂಜಾಪಾತ್ರರನು ಸಂ
ತುಷ್ಟಿಬಡಿಸಿ ಸಧರ್ಮದಲಿ ರಾಜ್ಯವನು ರಕ್ಷಿಸುತ
ಕೊಟ್ಟವರ ಕೊಂಡವರ ಮತ್ತೊಡ
ಬಟ್ಟವರನನುಜಾತ್ಮಜರನೊಳ
ಗಿಟ್ಟುಕೊಂಡಿಹುದುಚಿತವದು ಭೂಪಾಲ ಕೇಳೆಂದ ೨೧

ನುಡಿದುದನು ಪೂರೈಸಿ ಕಾಲದ
ಕಡೆಯ ಕಾಣಿಸಿ ಹೋಹವರ ಬೀ
ಳ್ಕೊಡುತ ಹಳೆಯರನಾಪ್ತರನು ಮನ್ನಿಸುತ ತನ್ನುವನು
ಹಿಡಿದು ಸೇವೆಯ ಮಾಡುವವರನು
ಬಿಡದೆ ನಾನಾ ತೆರದ ಪದವಿಯ
ಕೊಡುತಲಿಹುದಿದು ನೀತಿ ಚಿತ್ತೈಸೆಂದನಾ ಮುನಿಪ ೨೨

ವಿಲಗ ಸಾಗರನಾಗಿ ದೇಶವ
ಹಿಳಿದು ಹಿಂಡುತ ದಾನ ಧರ್ಮವ
ನುಳಿದು ದೇವ ಬ್ರಾಹ್ಮರೆನ್ನದೆ ಕಂಡವರನೆಳೆದು
ಗಳಿಗೆ ಸಂಖ್ಯೆಗೆ ದಂಡ ದೋಷವ
ಕೊಳುತ ಕಡೆಯಲಧೋಗತಿಗಳೊಳ
ಗಿಳಿದು ಹೋಹುದನೀತಿ ಚಿತ್ತೈಸೆಂದನಾ ಮುನಿಪ ೨೩

ಯೋನಿಯಲ್ಲದ ಠಾವುಗಳಲಿ ವಿ
ಯೋನಿಯಹ ವಿಷಯಂಗಳಲಿ ಪಶು
ಯೋನಿಯಲಿ ಸಂಭೋಗಿಸುವ ಪಾತಕರ ಪರಿವಿಡಿಯ
ಏನ ಹೇಳಲು ಬಹುದು ನರಕ ವಿ
ತಾನದೊಳಗೋಲಾಡಿ ಬಳಿಕಾ
ಶ್ವಾನ ಯೋನಿಯೊಳವರು ಜನಿಸುವರೆಂದನಾ ಮುನಿಪ ೨೪

ಜೀವ ಪರಮನಭೇದವನು ಸಂ
ಭಾವಿಸದೆ ವೇದಾಂತ ಶಾಸ್ತ್ರವಿ
ದಾವ ಮುಖವೆಂದರಿಯದೆಯೆ ದಾಸೋಹವೆಂದೆನುತ
ಕೋವಿದರ ಸಂಗವನುಳಿದು ಮಾ
ಯಾ ವಿಲಾಸದ ನೆಲೆಯ ನೋಡದೆ
ಸಾವುತಿಹುದೇ ದ್ವೈತ ಚಿತ್ತೈಸೆಂದನಾ ಮುನಿಪ ೨೫

ಉತ್ತಮರ ಸಂಗದೊಳಗೋಲಾ
ಡುತ್ತ ದುರ್ವಿಷಯಂಗಳನು ಮುರಿ
ಯೊತ್ತಿ ಸಕಲ ಚರಾಚರದ ಸುಖ ದುಃಖವನು ತಾನು
ಹೊತ್ತು ನಡೆವುತ ಪುಣ್ಯ ಪಾಪವಿ
ದೆತ್ತಣದು ತನಗೆಂಬ ಕಾಣಿಕೆ
ಯುತ್ತರೋತ್ತರ ಸಿದ್ಧಿ ಚಿತ್ತೈಸೆಂದನಾ ಮುನಿಪ ೨೬

ಪೊಡವಿಯೊಳಗೆ ಪುರೋಹಿತರನವ
ಗಡಿಸಿ ಧರ್ಮದ ಬಲದಿ ನಾಕಕೆ
ನಡೆವ ರಾಯರ ಹೊಯಿದಿಳಿಯಲಿಕ್ಕುವರಧೋಗತಿಗೆ
ಕೆಡಿಸುವರು ರಾಷ್ಟ್ರವನು ಕ್ಷಾತ್ರವ
ತಡೆಗಡಿಸಿ ಚತುರಂಗ ಬಲವನು
ಹುಡಿಹುಡಿಯ ಮಾಡುವರು ನಿರ್ಜರರರಸ ಕೇಳೆಂದ ೨೭

ಬಲಿಯ ರಾಜ್ಯ ವಿಭೀಷಣನ ಸಿರಿ
ಜಲನಿಧಿಯ ಗಾಂಭೀರ್ಯ ಬಾಣನ
ಬಲುಹು ಹನುಮಾನುವಿನ ಭುಜಬಲ ವೀರ ರಾಘವನ
ಛಲ ದಧೀಚಿಯ ದಾನ ಪಾರ್ಥನ
ಕೆಳೆ ಯುಧಿಷ್ಠಿರ ನೃಪನ ಸೈರಣೆ
ಗಳವಡುವ ಬದುಕುಳ್ಳಡದು ವಿಖ್ಯಾತಿ ಕೇಳೆಂದ ೨೮

ಇರುಳು ಹಗಲನವರತ ಪತಿ ಪರಿ
ಚರಿಯವನು ಮಾಡುತ್ತ ಪರ ಪುರು
ಷರನು ನೆನೆಯದೆ ಹಲವು ಸಂತತಿಗಳಿಗೆ ತಾಯಾಗಿ
ಇರುತ ದೇವ ಬ್ರಾಹ್ಮರನು ತಾ
ನಿರುತ ಸತ್ಕರಿಸುತ್ತಲಂತಃ
ಪುರದಲೆಸೆಯೆ ಗೃಹಸ್ಥೆಯೆನಿಸುವಳರಸ ಕೇಳೆಂದ ೨೯

ಮಡದಿ ನಿಜನಿಳಯವನು ಬಿಟ್ಟಡಿ
ಗಡಿಗೆ ಪರಗೃಹದೊಳಗೆ ಬಾಯನು
ಬಡಿದು ಮನೆಮನೆವಾರ್ತೆಯೆನ್ನದೆ ಬೀದಿಗಲಹವನು
ಒಡರಿಚುವ ಪತಿಯೊಬ್ಬನುಂಟೆಂ
ದೆಡಹಿ ಕಾಣದ ದಿಟ್ಟೆ ಹತ್ತನು
ಹಡೆದೊಡೆಯು ವರ್ಜಿಸುವುದುತ್ತಮ ಪುರುಷರುಗಳೆಂದ ೩೦

ಮುಡಿಯನೋಸರಿಸುತ್ತ ಮೇಲುದ
ನಡಿಗಡಿಗೆ ಸರಿವುತ್ತ ಮೌನವ
ಹಿಡಿದಧೋಮುಖಿಯಾಗಿ ಕಿಗ್ಗಣ್ಣಿಕ್ಕಿ ಕೆಲಬಲನ
ಬಿಡದೆ ನೋಡುತ ಮುಗುಳು ನಗೆಯಲಿ
ಜಡಿದು ಜಾರುವ ಜಾರವನಿತೆಯ
ಗೊಡವೆಗೊಳಗಾಗದವರುತ್ತಮ ಪುರುಷರುಗಳೆಂದ ೩೧

ಗುರುವಿನಲಿ ತಂದೆಯಲಿ ತಾಯಲಿ
ಹಿರಿಯರಲಿ ದೈವದಲಿ ಪಾಪದ
ಇರುಬಿನಲಿ ಗೋವಿನಲಿ ತೀರ್ಥದಲಿ ಮಿಗೆ ತನ್ನುವನು
ಹೊರೆವ ದಾತಾರನಲಿ ಮಂತ್ರದ
ಪರಮ ಸೇವೆಗಳಲ್ಲಿ ಧರಣೀ
ಸುರರೊಳಂಜಿಕೆ ಹಿರಿದಿರಲು ಬೇಕೆಂದನಾ ಮುನಿಪ ೩೨

ನೀತಿವಿದನಲ್ಲದ ಕುಮಂತ್ರಿ ವಿ
ನೀತಿಪರನಲ್ಲದ ಪುರೋಹಿತ
ನೇತಕವರಿಂದಾವ ಪುರುಷಾರ್ಥಂಗಳೆಯ್ದುವವು
ಕಾತರಿಸಿ ಸಮರಾಂಗಣಕೆ ಭಯ
ಭೀತನಹ ಭೂಭುಜನ ದೆಸೆಯಿಂ
ಬೀತು ಹೋಗದೆ ಸಕಲ ಸಂಪದವರಸ ಕೇಳೆಂದ ೮೩

ಧರ್ಮವಾವುದು ಮೇಣು ಜಗದೊಳ
ಧರ್ಮವಾವುದು ರಾಜ ಮಂತ್ರದ
ಧರ್ಮವಾವುದು ಮಾರ್ಗವಾವುದಮಾರ್ಗವೆಂದೇನು
ಕರ್ಮವಾವುದು ವಿಧಿವಿಹಿತ ದು
ಷ್ಕರ್ಮವಾವುದದೆಂಬ ಭೇದವ
ನಿರ್ಮಿಸಾ ಸಾಕೆಂದು ಬಿನ್ನಹ ಮಾಡಿದನು ಭೂಪ ೮೪

ಸತಿಸಹಿತ ವಿರಚಿಸಿದ ಧರ್ಮ
ಸ್ಥಿತಿ ಸಮೃದ್ಧಿಕವಾಗಿ ಸಲುವುದು
ಪತಿಗಳಲ್ಲದೆ ತನ್ನ ಸ್ವಾತಂತ್ರ್ಯದಲಿ ಮಾಡಿದುದು
ಅತಿಶಯವನೆಯ್ದದು ಕಣಾ ಭೂ
ಪತಿಯೆ ಕೇಳಿಹಪರದ ಗತಿ ನಿಜ
ಸತಿಯ ದೆಸೆಯಿಂದಲ್ಲದೇ ಫಲಿಸುವುದು ಹುಸಿಯೆಂದ ೮೫

ಅತಿಥಿ ಪೂಜೆಯನುಳಿದ ಜೀವ
ಸ್ಥಿತರ ಧರ್ಮಸ್ಥಿತಿಯನಪಹರಿ
ಸುತ ಬಲದಲಿಯವನಿಯಲಿ ನಿರಿಯಣದ ಕಾಲದಲಿ
ಗತಿಗೆಡಿಸಿ ಕೊಂಡೊಯ್ದು ವೈವ
ಸ್ವತನು ನಾಯಕ ನರಕದೊಳಗ
ದ್ದುತ ಬಹನು ಕುಲಕೋಟಿ ಸಹಿತವನೀಶ ಕೇಳೆಂದ ೮೬

ತಮ್ಮ ಕಾರ್ಯ ನಿಮಿತ್ತ ಗರ್ವವ
ನೆಮ್ಮಿದರೆ ತದ್ಗರ್ವದಿಂದುರೆ
ದಿಮ್ಮಿತಹುದಾ ಕಾರ್ಯ ಮರ್ತ್ಯ ಚರಾಚರಂಗಳಲಿ
ನಿರ್ಮಮತೆಯಲಿ ನಡೆದುಪಶ್ರುತಿ
ಗುಮ್ಮಹವನೈದುವವೊಲೌಕುವ
ಮರ್ಮಿಗಳನೊಳಹೊಯ್ದು ಕೊಂಬುದು ಭೂಪ ಕೇಳೆಂದ ೮೭

ಅರಸ ಕೇಳ್ಳೆ ಮಾರ್ಗ ಮೂರಾ
ಗಿರುತಿಹವು ಸಂಪೂರ್ಣ ಧನ ಗುರು
ಪರಿಚರಿಯ ಪರಿವರ್ತನೆಗಳೆನೆಂಬಿನಿತನತಿಗಳೆದು
ತಿರುಗಿ ಬಂದೊಡೆ ನಾಲ್ಕನೆಯ ಮತ
ದೊರಕಲರಿವುದೆ ಕಲೆಗಳನು ಸಂ
ವರಿಸುವ ನರೋತ್ತಮರಿಗವನೀಪಾಲ ಕೇಳೆಂದ ೮೮

ಕಾದುದಕದಾಸ್ನಾನ ಸಿದ್ಧಿಯ
ವೈದಿಕಾಂಗದ ಮಂತ್ರ ಸಾಧನ
ವೇದ ಹೀನರಿಗಿತ್ತ ಫಲವಾ ಶ್ರಾದ್ಧ ಕರ್ಮದಲಿ
ಐದದಿಹ ದಕ್ಷಿಣೆಗಳೆಂಬಿವು
ಬೂದಿಯಲಿ ಬೇಳಿದ ಹವಿಷ್ಯನ
ಹಾದಿಯಲ್ಲದೆ ಫಲವನೀಯವು ಭೂಪ ಕೇಳೆಂದ ೮೯

ಇಹಪರದ ಗತಿ ದಾನ ಧರ್ಮದ
ಬಹುಳತೆಗಳನು ತತ್ಸ್ವಭಾವದ
ವಿಹಿತ ಪುಣ್ಯದ ಬೆಳವಿಗೆಯು ಫಲವೊಂದು ನೂರಾಗಿ
ಬಹುದು ಸದ್ವಂಶದಲಿ ಜನಿಸಿಹೆ
ಮಹಿಮನಿರೆ ಲೋಕಾಂತರದ ಸುಖ
ವಹುದು ಸಂತಾನಾಭಿವೃದ್ಧಿಯು ನೃಪತಿ ಕೇಳೆಂದ ೯೦

ಚೋರನನು ಕಾಣುತ್ತ ಮರಳಿದು
ಚೋರನೆಂದೊಡೆ ಪತಿತನನು ನಿ
ಷ್ಠೂರತನದಿಂ ಪತಿತನೆಂದೊಡೆ ಸಾಮ್ಯ ದೋಷವದು
ಸಾರುವುದು ಮಿಥ್ಯೋತ್ತರದಲಿ ವಿ
ಚಾರಿಸದೆ ನುಡಿದವರಿಗಿಮ್ಮಡಿ
ನಾರಕದ ಫಲ ತಪ್ಪದವನೀಪಾಲ ಕೇಳೆಂದ ೯೧

ವಿನುತ ಮಧುಕೈಟಭರ ಮೇಧ
ಸ್ಸಿನಲಿ ಮೇದಿನಿಯಾದುದಿದ ನೀ
ನನುಭವಿಸುವೊಡೆ ಪುಣ್ಯಕೀರುತಿಯೆಂಬ ಪರಿಮಳದ
ಹೊನಲಿನಲಿ ತರವಿಡಿದು ಲೇಸಾ
ಗನುಭವಿಸುವುದದಲ್ಲದಿದ್ದೊಡೆ
ಮನುಜ ಮಾಂಸವ ಭಕ್ಷಿಸಿದ ಫಲವರಸ ಕೇಳೆಂದ ೯೨

ತನ್ನ ದಾನವನಪಹರಿಸಿ ಕೊಂ
ಡನ್ಯರಿತ್ತುದಕಡ್ಡ ಬೀಳುವ
ಧನ್ಯರುಗಳರವತ್ತು ಸಾವಿರ ವರುಷ ಪರಿಯಂತ
ಖಿನ್ನವಹ ವಿಷ್ಠೆಯೊಳು ಕ್ರಿಮಿಗಳ
ಜನ್ಮದಲ್ಲಿಹರಿದನರಿದು ನೀ
ನಿನ್ನು ಕೊಟ್ಟುದನುಳುಹಿಕೊಂಬುದು ಧರ್ಮವಲ್ಲೆಂದ ೯೩

ಕರಣ ಮೂರರೊಳಿತ್ತ ವಸ್ತುವ
ನಿರಿಸಿಕೊಂಡರೆ ಮಾಸ ಮಾಸಾಂ
ತರದೊಳೊಂದಕೆ ನೂರು ಗುಣದಲಿ ಕೋಟಿ ಪರಿಯಂತ
ಹಿರಿದಹುದು ದಾನ ಪ್ರಶಂಸೆಯ
ನಿರಿಸಿಕೊಂಡಿಹ ದಾನ ನರಕವ
ನೆರಡಕೊಂದೇ ದಾನ ಕಾರಣವೆಂದನಾ ಮುನಿಪ ೯೪

ದ್ಯೂತದಲಿ ಮದ್ಯದಲಿ ಘನ ಕಂ
ಡೂತಿಯಲಿ ನಿದ್ರೆಯಲಿ ಕಲಹ ವಿ
ಘಾತಿಯಲಿ ಮೈಥುನದಲಾಹಾರದಲಿ ಬಳಿಸಂದು
ಕೈತವದ ಉದ್ಯೋಗದಲಿ ದು
ರ್ನೀತಿಯಲಿ ಪರಸತಿಯರಲಿ ಸಂ
ಪ್ರೀತಿ ಬಲಿವುದು ಬೆದಕ ಬೆದಕಲು ಭೂಪ ಕೇಳೆಂದ ೯೫

ದುಷ್ಕೃತವನೆಸಗುವವರು ಫಲದಲಿ
ಕಕ್ಕುಲಿಸುವರು ಸುಕೃತವೆಂಬುದ
ಲೆಕ್ಕಿಸರು ತತ್ಫಲವನೇ ಬಯಸುವರು ಮಾನವರು
ಇಕ್ಕದರೆಯುದೆ ಬಿತ್ತಿ ಬೆಳೆಯದೆ
ಪುಕ್ಕಟೆಯು ಸ್ವರ್ಗಾದಿ ಭೋಗವು
ಸಿಕ್ಕಲರಿವುದೆ ರಾಯ ಚಿತ್ತೈಸೆಂದನಾ ಮುನಿಪ ೯೬

ವರ ಶ್ರುತಿಸ್ಮೃತಿಗಳು ಕಣಾ ಭೂ
ಸುರರ ದೃಷ್ಟಿಗಳಿವರೊಳೊಂದಕೆ
ಕೊರತೆಯಾಗಲು ಕಾಣನೆನಿಸುವನೆರಡನರಿಯದಿರೆ
ನಿರುತವಿದು ಜಾತ್ಯಂಧನೆನಿಸುವ
ನರಸ ಕೇಳೀ ಮಾಂಸ ದೃಷ್ಟಿಗ
ಳಿರವಲೇ ಸರ್ವತ್ರ ಸಾಧಾರಣವು ಲೋಕದಲಿ ೯೭

ವಾಚಿಸದೆ ವೇದಾರ್ಥ ನಿಚಯವ
ನಾಚರಿಸದಾಲಸ್ಯದಿಂದು
ತ್ಕೋಚನಾಗಿ ಪರಾನ್ನಪೂರಿತ ತಪ್ತ ತನುವಾದ
ನೀಚನಹ ಭೂಸುರನ ಕರುಳನು
ತೋಚುವಳಲ್ಲೈ ಮೃತ್ಯುವವನು ನಿ
ಶಾಚರನು ದ್ವಿಜನಲ್ಲ ಚಿತ್ತೈಸೆಂದನಾ ಮುನಿಪ ೯೮

ಸರಸಿಜಾಕ್ಷನ ವಿಷ್ಣು ನಾಮ
ಸ್ಮರಣೆಯಲಿ ಶ್ರುತಿ ಮೂಲ ವಾಕ್ಯೋ
ತ್ಕರುಷೆಯಲಿ ಭೂತಕ್ಕೆ ಹಿತವಹ ನಡವಳಿಯನರಿದು
ಪರವಚನವನು ತ್ರಿಕರಣದೊಳು
ಚ್ಚರಿಸಲಾಗದು ಸರ್ವಥಾ ಸ
ತ್ಪುರುಷರಭಿಮತವಿದು ಚಿತ್ತೈಸೆಂದನಾ ಮುನಿಪ ೯೯

ಲೋಕ ಸಮ್ಮತವಾವುದದನು ನಿ
ರಾಕರಿಸುವವರುಗಳು ತಾವೇ
ನಾಕವಾಳರೆ ಜಗಕೆ ತಮ್ಮನದಾರು ಬಲ್ಲವರು
ಬೇಕು ಬೇಡೆಂಬುದಕೆ ತಾವವಿ
ವೇಕಿಗಳು ಮೊದಲಿಂಗೆ ಪ್ರಾಮಾ
ಣೀಕರುಗಳವರಲ್ಲ ಚಿತ್ತೈಸೆಂದನಾ ಮುನಿಪ ೧೦೦

ಉತ್ತಮರುಗಳ ನಿಂದಿಸುತ ದು
ರ್ವೃತ್ತನಾಗಿಯಧರ್ಮ ಕೋಟಿಯೆ
ನಿತ್ಯವಿಧಿ ತನಗಾಗಿ ಧರ್ಮದ ತಾರತಮ್ಯವನು
ಎತ್ತಲೆಂದರಿಯದೆ ಜಗಕ್ಕೆ ಜ
ಡಾತ್ಮರಾಗಿಹ ವೇದಬಾಹ್ಯರ
ಮೃತ್ಯು ದೇವತೆ ಮುರಿದು ಮೋದದೆ ಬಿಡುವಳೇಯೆಂದ ೧೦೧

ಲೋಕದೊಳಗಣ ಪುಣ್ಯ ಪಾಪಾ
ನೀಕವನು ಯಮರಾಜನಾಲಯ
ದಾಕೆವಾಳಂಗರುಹುವವರು ಹದಿನಾಲ್ಕು ಮುಖವಾಗಿ
ನಾಲ್ಕು ಕಡೆಯಲಿ ಕವಿದು ಬರಿಸುವ
ರೌಕಿ ದಿನದಿನದಲ್ಲಿ ಗರ್ವೋ
ದ್ರೇಕದಲಿ ಮೈಮರೆದು ಕೆಡಬೇಡೆಂದನಾ ಮುನಿಪ ೧೦೨

ಚಕ್ರಿಯೊಬ್ಬಗೆ ಹತ್ತು ಕಡಿಕರ
ಲೆಕ್ಕವಂತಾ ಚಕ್ರಿ ಹತ್ತರ
ಲೆಕ್ಕದೊಳಗಾ ಧ್ವಜಿ ಕಣಾ ಧ್ವಜಿ ಹತ್ತರ ಸಮಾನ
ಮಿಕ್ಕ ವೇಸಿಗೆ ವೇಸಿ ಹತ್ತರ
ಲೆಕ್ಕವೊಬ್ಬರಸಂಗೆ ಪಾತಕ
ವೊಕ್ಕಲಿಕ್ಕುವುದರಸುತನ ಸಾಮಾನ್ಯವಲ್ಲೆಂದ ೧೦೩

ಬಲುಕರಿಸಿ ಭೂಮಿಯೊಳಗೊಂದಂ
ಗುಲವನೊತ್ತಿದವಂಗೆ ಪಶು ಸಂ
ಕುಲದಲೊಂದೇ ಗೋವನಪಹರಿಸಿದ ದುರಾತ್ಮಂಗೆ
ಅಳುಪಿ ಕನ್ಯಾರತ್ನದೊಳಗೊ
ಬ್ಬಳನು ಭೋಗಿಸಿದಂಗೆ ನರಕದೊ
ಳಿಳಿವುದಲ್ಲದೆ ಬೇರೆ ಗತಿಯಿಲ್ಲೆಂದನಾ ಮುನಿಪ ೧೦೪

ದಾನ ವಿರಹಿತರಾಗಿ ಜನಿಸಿದ
ಮಾನವರು ದಾರಿದ್ರರದರಿಂ
ಹೀನಸುಕೃತಿಗಳಾಗಿಯದರಿಂ ಘೋರತರ ನರಕ
ಆ ನರಕದಿಂ ಮರಳಿ ಪಾತಕ
ಯೋನಿ ಮರಳಿ ದರಿದ್ರವದು ತಾ
ನೇನ ಮಾಡಿಯು ಬೆನ್ನಬಿಡದವನೀಶ ಕೇಳೆಂದ ೧೦೫

ಪಾಕಶಾಸನನೈದಿ ವೃತ್ರನ
ಥಾಕುಗೆಡಿಸಿ ದಧೀಚಿಯಸ್ಥಿಯ
ಲೌಕಿ ಹೊಯ್ಯಲು ದಾನವನ ತನು ನೀರೊಳಡಗೆಡೆಯೆ
ತೂಕ ಕುಂದಿ ಜಲಾಧಿ ದೇವತೆ
ಯಾ ಕಪರ್ದಿಯ ಕರುಣದಲಿ ದ
ರ್ಭಾಕೃತಿಯ ಕೈಕೊಂಡುದವನೀಶ ಕೇಳೆಂದ ೧೦೬

ಆದಿಯಲಿ ಕಮಲಾಸನನು ಮಧು
ಸೂದನನು ಮಧ್ಯದಲಿ ಮೇಲಣ
ಹಾದಿಯಲಿ ಗಿರಿಜೇಶನಿರೆ ತ್ರೈಮೂರ್ತಿಮಯವಾಗಿ
ಕಾದುಕೊಂಡಿಹರಖಿಳ ಲೋಕವ
ನೈದೆ ದರ್ಭಾಂಕುರದ ಮಹಿಮೆಯ
ಭೇದವನು ಬಣ್ಣಿಸುವನಾವನು ಭೂಪ ಕೇಳೆಂದ ೧೦೭

ಬೆರಳ ಮೊದಲಲಿ ಭೂಸುರರು ನಡು
ವೆರಳೆಡೆಗಳಲಿ ಪಾರ್ಥಿವರು ತುದಿ
ವೆರಳೊಳಗೆ ವೈಶ್ಯರುಗಳೀ ಕ್ರಮದಲಿ ಪವಿತ್ರವಿದು
ಧರಿಸಬೇಹುದು ದಕ್ಷಿಣ ಕರಾಂ
ಬುರುಹದಲಿ ದಿನದಿನದ ಸಂಧ್ಯಾಂ
ತರದ ಸಮಯದಲರಸ ಚಿತ್ತೈಸೆಂದನಾ ಮುನಿಪ ೧೦೮

ಮೇರೆದಪ್ಪಿದ ಜಪ ಸುಕಲ್ಪಿತ
ಧಾರೆಯುಡುಗಿದ ದಾನ ದರ್ಭಾ
ಕಾರ ವಿರಹಿತವಾದ ಸಂಧ್ಯಾವಂದನಾದಿಗಳು
ಪಾರವೆಯ್ದದ ಶೌಚ ವಿನಯ ವಿ
ಹಾರವಿಲ್ಲದ ಪೂಜನೆಗಳುಪ
ಕಾರವಹುದೇ ರಾಯ ಚಿತ್ತೈಸೆಂದನಾ ಮುನಿಪ ೧೦೯

ದೇವತಾಸ್ಥಾನದಲಿ ವಿಪ್ರಸ
ಭಾವಳಯದಲಿ ರಾಜಪುರುಷರ
ಸೇವೆಯಲಿ ಗುರುಸದನದಲಿ ನದಿಯಲಿ ತಟಾಕದಲಿ
ಗೋವುಗಳ ನೆರವಿಯಲಿ ವರ ವೃಂ
ದಾವನದೊಳುಪಹತಿಯ ಮಾಡುವು
ದಾವ ಗುಣ ಗರುವರಿಗೆ ಚಿತ್ತೈಸೆಂದನಾ ಮುನಿಪ ೧೧೦

ದೆಸೆಗಳೇ ವಾಸಸ್ಸು ರಾಜ್ಯ
ಪ್ರಸರಣವು ನಿರ್ಲಜ್ಜೆ ಜಟೆ ರಂ
ಜಿಸುವ ಧೂಳೀ ದೂಸರದ ಗಂಗಾಧರನವೋಲು
ಎಸೆವ ಸುತರುಗಳಿಲ್ಲದಿರೆ ಶೋ
ಭಿಸುವುದೇ ಸಂಸಾರವೆಂಬುದು
ವಸುಧೆಯೊಳು ಪುಣ್ಯಾಧಿಕರುಗಳಲ್ಲದಿಲ್ಲೆಂದ ೧೧೧

ಗುರುಸುತನವೋಲಾಯು ನೀಲಾಂ
ಬರನವೊಲು ಬಲ ದಶರಥನವೋಲ್
ಸಿರಿ ನದೀಜನವೋಲು ಶೌರ್ಯವು ರಘುಪತಿಯವೋಲು
ಅರಿವಿನಾಶನ ನಹುಷನವೊಲ್ಸೈ
ಶ್ವರಿಯ ಮಾರುತಿಯವೊಲು ಗತಿ ಸಂ
ವರಿಸುವುದು ಶಿವನೊಲಿದವರುಗಳಿಗಲ್ಲದಿಲ್ಲೆಂದ ೧೧೨

ಕ್ಷಿತಿಯವೊಲು ಪಾವನತೆ ಕುರು ಭೂ
ಪತಿಯವೋಲಭಿಮಾನ ಲಕ್ಷ್ಮೀ
ಪತಿಯವೊಲುಸತ್ಕೀರ್ತಿ ವಿದುರನವೋಲು ವಿಜ್ಞಾನ
ಕ್ಷಿತಿಯವೊಲು ಸೈರಣೆ ಸುಹೃತ್ಸಂ
ತತಿಯವೊಲು ಪರಿಣಾಮ ಕುಂತೀ
ಸುತರವೊಲು ಸತ್ಯಾಧಿಕರು ಲೋಕದೊಳಗಿಲ್ಲೆಂದ ೧೧೩

ಗಗನದಗಲದಿನುಗುವ ವೃಷ್ಟಿಯೊ
ಳೊಗೆದ ಕೀಲಾಲವು ಸಮುದ್ರವ
ಹೊಗುವ ನದಿ ನಾನಾ ಪ್ರಕಾರದ ರೂಪುಗಳಲೆಸೆವ
ಒಗುಮಿಗೆಯ ದೈವದ ಪದಾಂಬುಜ
ಯುಗಳದರ್ಚನೆ ಪೂಜನೆಗಳಿವು
ಜಗದುದರನನು ಮುಟ್ಟುವೇ ಭೂಪಾಲ ಕೇಳೆಂದ ೧೧೪

ಜಲದೊಳಗೆ ವಾರಾಹ ವಿಷ್ಣು
ಸ್ಥಳದೊಳಗೆ ವಾಮನನು ವನ ಸಂ
ಕುಳದೊಳಗೆ ನರಸಿಂಹನಾಗಿಯೆ ಭಕ್ತನಿಕರವನು
ಸಲಹುತಿಹನೊಮ್ಮೆಯು ಜಗತ್ರಯ
ದೊಳಗು ಹೊರಗೆಂದೆನ್ನದನುದಿನ
ಜಲರುಹಾಕ್ಷನು ಕೃಷ್ಣ ಕೇಶವನಲ್ಲದಿಲ್ಲೆಂದ ೧೧೫

ಕತ್ತಲೆಯ ಕಾಲಾಟ ಸೂರ್ಯನ
ನೊತ್ತುವುದೆ ದುಷ್ಕರ್ಮ ಕೋಟಿಗ
ಳೆತ್ತ ಮುಟ್ಟುವುವೈ ಮಹಾಪುರುಷರನು ಖಗಪತಿಯ
ತತ್ತುದೇ ವಿಷ ಕೃಷ್ಣರಾಯನ
ಭಕ್ತರುಗಳನುಭವಿಸುವುದು ತಾ
ಪಥ್ಯವೇ ಜಡಜೀವರಿಗೆ ಹೇಳೆಂದನಾ ಮುನಿಪ ೧೧೬

ಅರುಹಬಾರದು ಮುಂದೆ ಬಹ ದಿನ
ಬರಿಸು ನೀನೆಚ್ಚೆತ್ತು ನಡೆ ಮೈ
ಮರೆಯದಿರು ನಿನ್ನಾತ್ಮಜರ ವೈರಾನುಬಂಧದಲಿ
ಬರಿದಹುದು ಬ್ರಹ್ಮಾಂಡ ನೀನದ
ನರಿಯೆ ಮೇಲಣ ಹಾಗು ಬಾಗಿನ
ಹೊರಿಗೆ ದೈವಾಧೀನವಾಗಿಹುದೆಂದನಾ ಮುನಿಪ ೧೧೭

ತೆರಹುಗುಡದೆ ಧರಿತ್ರಿಯೊಳಗೀ
ಡಿರಿದ ದೈತ್ಯ ಸಹಸ್ರ ಕೋಟಿಯ
ನಿರಿದು ಭೂಭಾರವನಿಳುಹಿ ನಿರ್ಜರರ ದುಗುಡವನು
ಹರಿದು ಹಾಯಿಕಿ ಭಕ್ತರನು ನೆರೆ
ಮೆರೆಯಲೋಸುಗ ಜನಿಸಿದನು ಹರಿ
ಯರಿಯಲಾ ಶ್ರೀಕೃಷ್ಣರಾಯನು ಮನುಜನಲ್ಲೆಂದ ೧೧೮

ಆತನಾ ಪಾಂಡವರ ಹರಿಬವ
ನಾತು ಪಾರ್ಥನ ರಥಕೆ ತಾನೇ
ಸೂತನಾದನು ನಿಮಗೆ ಜಯವೆಲ್ಲಿಯದು ಭೂಪತಿಯೆ
ಭೂತಳವನೊಪ್ಪಿಸುವುದಸುರಾ
ರಾತಿಯನು ಮರೆಹೊಕ್ಕು ಬದುಕುವು
ದೀ ತತುಕ್ಷಣವಲ್ಲದಿರ್ದೊಡೆ ಕೆಡುವಿರಕಟೆಂದ ೧೧೯

ಜಲಧಿಯೊಳು ದುಗ್ಧಾಬ್ಧಿ ತೀರ್ಥಾ
ವಳಿಗಳೊಳು ಸುರನದಿ ಮುನೀಶ್ವರ
ರೊಳಗೆ ವೇದವ್ಯಾಸನಾ ವ್ರತಿಗಳೊಳು ಹನುಮಂತ
ಜಲರುಹಾಕ್ಷನೆ ದೈವದೊಳು ಕೇ
ಳುಳಿದ ಧರಣೀಪಾಲರೊಳಗ
ಗ್ಗಳೆಯನೈ ಧರ್ಮಜನು ಚಿತ್ತೈಸೆಂದನಾ ಮುನಿಪ ೧೨೦

ಈ ಪರಿಯ ಬೋಧೆಯಲಿ ನೃಪನನು
ತಾಪವನು ಮಾಣಿಸಿ ಕುಬುದ್ಧಿ
ವ್ಯಾಪಕನು ಧೃತರಾಷ್ಟ್ರನೆಂಬಪಕೀರ್ತಿಯನು ಬಿಡಿಸಿ
ಕಾಪಥಂಗಳ ನಿಲಿಸಿ ತತ್ವಕ
ಳಾಪ ವಿಮಲ ಜ್ಞಾನದುದಯದ
ರೂಪು ತಾನೆಂಬಂತೆ ಸೂರ್ಯೋದಯವ ಕಾಣಿಸಿದ ೧೨೧

ಧರಣಿಪನ ಸಂತೈಸಿದನು ಮುನಿ
ವರನು ತನ್ನಾಶ್ರಮಕೆ ತಿರುಗಿದ
ನುರುತರ ಪ್ರೇಮದಲಿ ಧೃತರಾಷ್ಟ್ರಾವನೀಶ್ವರನು
ಹರಿಯುದಮಳಾನಂದ ರಸದಲಿ
ಹೊರೆದು ಹೊಂಪುಳಿಯೋಗಿ ಲಕ್ಷ್ಮೀ
ಧರನ ನೆನೆದನು ರಾಯ ಗದುಗಿನ ವೀರ ನರಯಣನ ೧೨೨

ಐದನೆಯ ಸಂಧಿ

ಸೂ. ವೀರ ಪಾಂಡವರದಟನಾ ದನು
ಜಾರಿ ಹೇಳಿದ ವಚನರಚನೆಯ
ಕೌರವಗೆ ಬಂದರುಹೆ ಕೋಪಿಸಿ ಸಂಜಯುನ ಜರೆದ

ಬೀಳುಕೊಂಡುದು ರಜನಿ ಕುರು ಭೂ
ಪಾಲನುಪ್ಪವಡಿಸಿದನೋಲಗ
ಶಾಲೆಯಲಿ ನೆರಹಿದನು ಸಭ್ಯರನಾಪ್ತ ಮಂತ್ರಿಗಳ
ಕೇಳುವೆವು ಕರೆ ಸಂಜಯುನನವ
ರೋಲಗದ ಮೈಸಿರಿಯನೆಂದು ನೃ
ಪಾಲನಟ್ಟಿದ ದೂತರೊಡನೈತಂದನೋಲಗಕೆ ೧

ಬಂದು ಮೈಯಿಕ್ಕಿದನು ಕುರು ನೃಪ
ವೃಂದವನು ಗಾಂಧಾರಿಯನು ಯಮ
ನಂದನನು ಬೆಸಗೊಂಡು ಕಳುಹಿದನುಚಿತ ವಚನದಲಿ
ಎಂದು ಬಳಿಕಿನ ರಾಜ ಕಾರ್ಯವ
ನಂದು ಬಿನ್ನೈಸಿದನು ಚಿತ್ತೈ
ಸೆಂದು ಧೃತರಾಷ್ಟ್ರಂಗೆ ದುರ್ಯೋಧನಗೆ ಕೈಮುಗಿದು ೨

ಜೀಯ ಬಿನ್ನಹವಿಂದು ಪಾಂಡವ
ರಾಯನೈಶ್ವರ್ಯವನು ಸಾವಿರ
ಬಾಯ ಸರ್ಪನು ಹೊಗಳಲಳವಲ್ಲೆನ್ನ ಪಾಡೇನು
ನಾಯಕರ ಕಡುಹುಗಳನವರವ
ರಾಯತವನನಿಬರಿಗೆ ಕಮಲದ
ಳಾಯತಾಕ್ಷನ ಕರುಣದಳತೆ ವಿಚಿತ್ರತರವೆಂದ ೩

ಓಲಗದೊಳುಬ್ಬೆದ್ದು ನುಡಿಯಲಿ
ಹೂಳಿ ತಮತಮಗೆನ್ನ ಜರೆದರು
ಕಾಳಗಕೆ ಕೈಗಟ್ಟಿ ಹಿಂಡೆದ್ದೊದರಿತವನಿಪರು
ಮೇಲೆ ಸಂತೈಸಿದನು ಧರ್ಮ ನೃ
ಪಾಲನಲ್ಲಿಂ ಬಳಿಕ ಮುರಹರ
ನಾಲಯಕೆ ಪರಿಮಿತದೊಳರ್ಜುನನೆನ್ನ ಕರೆಸಿದನು ೪

ದೇವನಿದ್ದನು ಸತ್ಯಭಾಮಾ
ದೇವಿಯರ ನಸುಮಲಗಿಯರ್ಜುನ
ದೇವನಂಕದ ಮೇಲೆ ಸಿರಿಪದಪಂಕಜವ ನೀಡಿ
ನಾವು ಬರಲೆಮಗುಚಿತದಲಿ ಸಂ
ಭಾವನೆಯ ಮಾಡಿದರು ನಮಗಿ
ನ್ನಾವುದನು ನೇಮಿಸಿದಿರೆನಲಿಂತೆಂದನಸುರಾರಿ ೫

ಎಮಗೆ ಸರಿಯಿತ್ತಂಡದಲ್ಲಿಯ
ಮಮತೆ ಬೇರೊಬ್ಬರಲಿ ಪಕ್ಷ
ಭ್ರಮೆಯ ಮಾಡೆವು ಹಿತವ ಬಯಸುವೆವೆರಡು ಸಂತತಿಗೆ
ಕಮಲಮುಖಿ ಸುಲಿವಡೆದು ಲಕ್ಷ್ಮೀ
ರಮಣ ಲಕ್ಷ್ಮೀರಮಣ ಲಕ್ಷ್ಮೀ
ರಮಣಯೆಂದೊರಲಿದೊಡೆ ಸಂಜಯ ನೊಂದೆ ನಾನೆಂದ ೬

ಕಾವುದೈ ಗೋವಿಂದ ಸಲಹೈ
ದೇವಕೀಸುತ ಗಂಡರೈವರ
ಭಾವ ಬೆಟ್ಟಿತು ನೀನಲ್ಲೈ ದೇಸಿಗರ ದೈವವಲ್ಲೈ
ದೇವ ಕೆಟ್ಟೆನು ಕೆಟ್ಟೆನೈ ಕರು
ಣಾವಲಂಬನದಿಂದ ತಡೆಯೈ
ಜೀವನವನೆಂದೊರಲಿದಳು ಹಂಗಿಗನು ತಾನೆಂದ ೭

ಭಂಟನಹೆ ಬಕುತರಿಗೆ ನೆನೆವರು
ನಂಟರೆಮಗೊಲಿದಂತೆ ಹೊಗಳಿದ
ರೆಂಟು ಮಡಿ ಹಿಗ್ಗುವೆವು ಮೆಚ್ಚೆವು ತರ್ಕ ಸಾಧಕರ
ಉಂಟು ಪಾಂಡವರೈವರಲಿ ಬಲು
ನಂಟತನ ಮರೆಯೇತಕೈವರ
ಕಂಟಕರು ನಮಗಾದ ಕಂಟಕರೆಂದು ಹರಿ ನುಡಿದ ೮

ನೆನೆವುದೆಂದನು ಪಾರ್ಥನಾ ಕಾ
ನನದೊಳಗೆ ಗಂಧರ್ವರಲಿ ಬಂ
ಧನವನೀ ಗೋಗ್ರಹಣದಲಿ ಮಾಡಿದ ಪಲಾಯನವ
ವನಜವದನೆಯ ಬಯಸಿದೊಡೆ ಬಿ
ಲ್ಲಿನಲಿ ಬಲಿವಡೆದುದನು ಕೌರವ
ಜನಪ ಮರೆದಿರಲಾಗದೆಂದರಸಂಗೆ ಹೇಳೆಂದ ೯

ಧೀರ ಭೀಮನ ಗದೆಯ ಹೊಯ್ಲಿನ
ಭಾರಣೆಯ ನಮ್ಮತುಳ ಚಾಪದ
ಸಾರ ಶಸ್ತ್ರಾವಳಿಯ ಮಳೆಗಾಲದ ಮಹಾದ್ಭುತವ
ವೀರ ನಕುಲನ ಸಾತ್ಯಕಿಯ ಬಲು
ಕೂರಸಿಯ ಸಹದೇವ ಮತ್ಸ್ಯರು
ದಾರತೆಯ ನಿಮ್ಮರಸ ನೆನೆದಿಹುದೆಂದನಾ ಪಾರ್ಥ ೧೦

ಹಿಂದೆ ಜೂಜಿನ ಸಭೆಯೊಳಗೆ ನಾ
ವೆಂದ ಮಾತುಗಳುಂಟು ತಾವದ
ಮುಂದೆ ನೋಡಲಿ ಕರ್ಣ ಶಕುನಿ ಸುಯೋಧನಾದಿಗಳು
ಇಂದು ನೆನೆವುದು ದೇಶ ಕಾಲವ
ಹಿಂದುಗಳೆಯದೆ ಬೇಗ ಮಾಡುವು
ದೆಂದು ಬಿನ್ನಹ ಮಾಡಹೇಳಿದನರ್ಜುನನು ನಿಮಗೆ ೧೧

ತೊಡೆಗಳಿಗೆ ಸುಕ್ಷೇಮವೇ ನಿ
ನ್ನೊಡೆಯನವನೊಡಹುಟ್ಟಿದನ ಮೈ
ಜಡಿದುದೇ ಪಾಲಿಸಿದಡನಿಬರಿಗಹುದು ರಕ್ತಜಲ
ಒಡನೆ ಹುಟ್ಟಿದ ನೂರುವರು ಮೈ
ಗೆಡರಲೇ ಬೆಸಗೊಂಬುದಂಜದಿ
ರೊಡೆಯರಿಗೆ ಹೊಣೆಗೊಂಡೆ ಹೇಳೆಂದಟ್ಟಿದನು ಭೀಮ ೧೨

ಸಾಕು ಸಂಜಯ ಗಳಹದಿರು ಫಡ
ನೂಕಿವನನಾರಲ್ಲಿಗಟ್ಟಿದ
ರಾ ಕುಠಾರರ ಬಯಲ ಗೃಹ ಗರ್ಜನೆಯ ಗರ ಹೊಡೆದು
ತೇಕಿ ತಲೆಕೆಳಕಾದನೀಯವಿ
ವೇಕಸಾಗರನೆಲೆ ನೃಪತಿ ಜಗ
ದೇಕ ವೀರನು ಕರ್ಣ ತಾನಿರೆ ಸಂಧಿಯೇಕೆಂದ ೧೩

ಮಂದಿಯಲಿ ಮೈಮರೆದು ಬಾಹಿರ
ನೆಂದ ಮಾತನು ರಾಜಸಭೆಯಲಿ
ತಂದು ಹರಹುವನಿವನು ಶಿಷ್ಟನೆ ಜಗದ ಭಂಡನಲ
ಇಂದುಮೌಳಿಯನೊಂದು ಬಾರಿಗೆ
ಹಿಂದು ಮುಂದನು ಮಾಡುವೆನು ತಾ
ಮಂದಿ ಕುಂತೀ ಮಕ್ಕಳಿದಿರೇ ತನಗೆ ಹೇಳೆಂದ ೧೪

ಭಂಡನೇ ಸಂಜಯನು ಲೋಕದ
ಭಂಡ ನೀನೆಲೆ ಕರ್ಣ ನಿನಗಾ
ಪಾಂಡವರ ಪರಿಯಂತವೇ ನಿನಗವರ ಸೇನೆಯಲಿ
ಗಂಡನೊಬ್ಬನು ಸಾಕು ಕೆದರುವೆ
ಗಂಡು ಗರ್ವದ ಮಾತ ನಿನ್ನನು
ದಿಂಡುದರಿವನು ಮುನಿದಡರ್ಜುನನೆಂದನಾ ಭೀಷ್ಮ ೧೫

ಖುಲ್ಲನಿವನೀ ಕರ್ಣನವರಲಿ
ಬಲ್ಲಿದನು ತಾನೆಂದು ದಿಟವಿವ
ನಲ್ಲಿ ನಂಬುಗೆ ಮಾಡದಿರು ಮರುಳೇ ಮಹೀಪತಿಯೆ
ಇಲ್ಲ ನೋಡರ್ಜುನಗೆ ಪಡಿ ನರ
ರಲ್ಲಿ ನಿರ್ಜರರಲ್ಲಿ ಪನ್ನಗ
ರಲ್ಲಿ ಕೈವಾರಿಗಳೆ ನಾವಿನ್ನೆಂದನಾ ಭೀಷ್ಮ ೧೬

ಮುರಿಯದಿರು ಗಾಂಗೇಯನೆಂದುದೆ
ಪರಮ ಮಂತ್ರವು ಪಾರ್ಥನನು ಸಂ
ಗರದೊಳಾನುವರಿಲ್ಲ ಕೇಳಮರಾಸುರಾಳಿಯಲಿ
ದುರುಳರಾಡುವ ಹೊಳ್ಳುನುಡಿಗಳು
ಗರುವರಭಿಮತವಲ್ಲ ಸಂಧಿಗೆ
ಕೊರಳುಗೊಳಿಸುವುದುಚಿತವೆಂದನು ದ್ರೋಣನರಸಂಗೆ ೧೭

ಹುರುಳುಗೆಡಿಸುವಿರಾವು ನುಡಿದೊಡೆ
ಕರಗಿ ಕುಂತೀ ಮಕ್ಕಳೆಂದೊಡೆ
ಹರಹಿ ಕೊಂಬಿರಿ ಡಿಂಬವೆಮ್ಮಲಿ ಜೀವವವದಿರಲಿ
ಭರತ ಸಂತತಿಯಲ್ಲಿ ಕೆಲಬರು
ಸುರರು ಕೆಲಬರು ನರರೆ ಸಾಕಂ
ತಿರಲಿ ಸಮರದೊಳೆಮ್ಮ ನೋಡೆಂದನು ಸುಯೋಧನನು ೧೮

ಬೇಡ ಮಗನೇ ಕೃಷ್ಣರಾಯನು
ರೂಢಿಸಿದ ಕಟ್ಟಾಳು ಕೆಲ ಕೆಲ
ರಾಡುವರು ಸಾಕ್ಷಾತು ಲಕ್ಷ್ಮೀಕಾಂತ ಹರಿಯೆಂದು
ಕೂಡಿಕೊಂಡಿಹನವರನಾತನು
ಕೇಡನವರಿಗೆ ಹೊದ್ದಲೀಯನು
ನಾಡನೊಪ್ಪಿಸು ಮಗನೆಯೆಂದನು ಬೆದರಿ ಧೃತರಾಷ್ಟ್ರ ೧೯

ಮರುಳುಗಳಲಾ ಬೊಪ್ಪನವರೀ
ಮುರಹರನು ಹರಿಯೆಂದು ಮುನ್ನದ
ನರಿದಿಹೆನು ನೀವಂಜದಿರಿ ನಿಮಗಾಗದವಸಾನ
ಗುರು ನದೀಸುತ ಮುಖ್ಯರಿರಲೀ
ಕುರುಕುಲಕೆ ಕೇಡಹುದೆ ಕೊಲುವೊಡೆ
ಸುರಪತಿಯ ಸುತನಳಪೆಯೆಂದನು ಕೌರವರರಾಯ ೨೦

ಭಾರ ಹೆಚ್ಚಿದಡೊರಲಿ ಭೂಮಿ ಮಾ
ನಾರಿ ಬಿನ್ನಹ ಮಾಡಿದೊಡೆ ದೈ
ತ್ಯಾರಿ ಬಿಜಯಂಗೈದನವನಿಗೆ ಮನುಜ ವೇಷದಲಿ
ಭೂರಿ ದನುಜರನೊರಸಿದನು ಕೈ
ಯಾರ ಬಳಿಕರ್ಜುನನ ಕೈಯಲಿ
ಕೌರವರ ಕೊಲಿಸುವನು ನಾವಿನ್ನಂಜಲೇಕೆಂದ ೨೧

ಕಾವನಾತನೆ ಕೊಲುವನಾತನೆ
ಸಾವೆನಾತನ ಕೈಯ ಬಾಯಲಿ
ನೀವು ಪಾಂಡವರೊಡನೆ ಸುಖದಲಿ ರಾಜ್ಯವಾಳುವುದು
ಸಾವ ನಾನಂಜದೊಡೆ ಬದುಕುವ
ನೀವು ಚಿಂತಿಸಲೇಕೆ ನಿಮ್ಮನು
ಕಾವನೈ ಕರುಣದಲಿ ಗದುಗಿನ ವೀರನಾರಯಣ ೨೨

ಆರನೆಯ ಸಂಧಿ

ಸೂ. ಸಮರದನುಸಂಧಾನದಲಿ ಸಂ
ಭ್ರಮಿಸಿ ಶೌರಿ ಸಮೀರಸುತನಲಿ
ಸಮತೆಯನು ಸೇರಿಸಿದನಂದು ಸಮಗ್ರ ಸೂಕ್ತಿಯಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಧರ್ಮಜನಹಿತ ಮಂತ್ರಿಯ
ಬೀಳುಕೊಟ್ಟನು ಬಂದನಸುರಾರಾತಿಯಿದ್ದೆಡೆಗೆ
ಮೇಲಣನುವಿನ್ನೇನು ಲಕ್ಷ್ಮೀ
ಲೋಲ ಕರುಣಿಸು ಕೌರವ ಕ್ಷಿತಿ
ಪಾಲಕರಲೆಮಗೇನು ಘಟಿಸುವುದೆಂದು ನೃಪ ನುಡಿದ ೧

ಕ್ಷಮೆಗೆ ಸೇರುವರಲ್ಲ ಮೂರ್ಖರು
ಕುಮತಿಗಳು ಮುಂದರಿಯದವರ
ಕ್ರಮವ ನೆಗಳಿದಡಳಿವುದನ್ವಯದಮಳ ಕೀರ್ತಿಗಳು
ನಮಗೆ ಹದನೇನಿನ್ನು ಸಂಧಿಯೊ
ಸಮರವೋ ಚಿತ್ತೈಸಬೇಹುದು
ಕಮಲಲೋಚನಯೆಂದು ಬಿನ್ನೈಸಿದನು ಯಮಸೂನು ೨

ಏನು ನಿನ್ನಭಿಮತವು ವರ ಸಂ
ಧಾನವೋ ಸಂಗ್ರಾಮವೋ ನಯ
ವೇನು ಮನದೊಳವರಿಯೊಳಿರಿಸದೆ ಹೇಳು ನಿಶ್ಚಯವ
ನೀನೊಲಿದ ಹದನಾವುದದನೊಲಿ
ದಾನು ಘಟಿಸುವೆನೆಂದು ಕುಂತೀ
ಸೂನುವನು ಬೆಸಗೊಂಡನಸುರ ವಿರೋಧಿ ನಸುನಗುತ ೩

ಅಳಿವವೊಡಲಿದು ಅವನಿ ಸಾಗರ
ವಳಿಯಲುಳಿವುದು ಕೀರ್ತಿ ಸೋದರ
ರೊಳಗೊಳಗೆ ಹೊಯ್ದಾಡಿ ಕೆಟ್ಟರುಯೆಂಬ ದುರಿಯಶದ
ಹಳಿವು ಹೊರುವುದು ದೇವ ಸುಡಲಾ
ನೆಲನನಾ ಕೌರವನ ಕೈಯಲಿ
ಕೆಲವು ನಗರಿಯ ಕೊಡಿಸಿ ನಮ್ಮನು ಸಂತವಿಡಿಯೆಂದ ೪

ವರ ಕುಶಸ್ಥಳವನು ವೃಕ ಸ್ಥಳ
ಪುರವನಾವಂತಿಯನು ಕೌರವ
ಧರಣಿಪಾಲನಲೀಸಿ ಕೊಡುವುದು ವಾರಣಾವತವ
ಶರಧಿ ಮೇರೆಯೊಳೈದನೆಯ ಪುರ
ವರವನೊಲಿದುದ ಕೊಡಲಿ ಮನ ಮ
ತ್ಸರವ ಮರೆದೋಲೈಸುವೆವು ಧೃತರಾಷ್ಟ್ರನಂಘ್ರಿಗಳ ೫

ನೀವು ಬಿಜಯಂಗೈದು ಸಂಧಿಯ
ನಾವ ಪರಿಯಲಿ ಘಟಿಸಿ ಕುರು ಭೂ
ಪಾವಳಿಯೊಳೆಮ್ಮಿರವು ಸಂಭವಿಸುವವೊಲೆಸಗುವುದು
ಲಾವಕರ ನುಡಿಗಳಲಿ ಕೆಡುವುದು
ಕೋವಿದರ ಮತವವರಮೇಲೆಮ
ಗಾವ ಮನಮುನಿಸಿಲ್ಲ ಸಂಧಿಯ ಘಟಿಸಿ ಸಾಕೆಂದ ೬

ಎನೆ ಮುರಾಂತಕನಳುಕಿ ಯಮನಂ
ದನನ ನುಡಿ ಸಂಧಾನದಲಿ ಸಂ
ಜನಿಸಿತಾದೊಡೆ ಕಾಣೆನವನಿಯ ಹೊರೆಗೆ ಹರಿವುಗಳ
ಮನದೊಳನುಸಂಧಾನವಂತಕ
ತನುಜನಲಿ ತೊಳಸಾಯ್ತು ತೋಟಿಯ
ನೆನಹು ತಾನೇನೆನುತ ಚಿಂತಿಸುತಿರ್ದನಸುರಾರಿ ೭

ಎಲೆ ಕೃತಾಂತಜ ವೈರಿ ಭೂಮಿಪ
ಕುಲ ಕೃತಾಂತ ಸರಾಗನಹೆ ನಿ
ರ್ಮಳಿನ ಧರ್ಮದಲಾ ಸುಯೋಧನನಧಿಕ ಕಲ್ಮಷನು
ನೆಲವ ಕೊಡಲರಿಯನು ವೃಥಾ ಕ
ಕ್ಕುಲಿತೆಯಲ್ಲದೆ ಕಾಣೆನಿದರಲಿ
ಫಲವೆನುತಸುರಾರಿ ನುಡಿದನು ಧರ್ಮತನುಜಂಗೆ ೮

ಅರಸನಭಿಮತವಿಂದು ಸಂಧಿಗೆ
ಮರಳಿತೆಲೆ ಪವಮಾನಸುತ ನಿ
ನ್ನರಿತವಾವುದು ಮನವ ವಂಚಿಸಬೇಡ ಹೇಳೆನಲು
ಧರಣಿಪತಿ ತಪ್ಪುವನೆ ಕರ್ಕಶ
ಭರದ ಕದನದಲೇನು ಫಲ ಸೋ
ದರರ ವಧೆಗೊಡಬಡುವನಲ್ಲಸುರಾರಿ ಕೇಳೆಂದ ೯

ಹಗೆಯೊಳೆಮ್ಮವರೊಳಗೆ ಎದೆಗಿ
ಚ್ಚುಗಳ ಖುಲ್ಲಕುಠಾರರಪನಂ
ಬುಗೆಯ ಬಳಸಿದರದು ಪುರಾಕೃತ ಕರ್ಮದವಶೇಷ
ಬಗೆಯೆನವಮಾನವನು ಕೌರವ
ರಗಡು ಮಾಡಿದರೆಂಬ ಚಿತ್ತದ
ದುಗುಡವಿಂದೆಮಗಿಲ್ಲ ಸಂಧಿಯ ರಚಿಸಿ ಸಾಕೆಂದ ೧೦

ಎಲೆ ಮಹಾದೇವಾಯ್ತು ಹಾಲಾ
ಹಲ ಸುಧಾರಸ ಉಕ್ಕಿದುರಿಯು
ಗ್ಗಳದ ಶೀತಳವಾಯ್ತು ಸಿಡಿಲಾಟೋಪ ನಯವಾಯ್ತು
ಕೊಳುಗುಳಕೆ ಪವಮಾನನಂದನ
ನಳುಕಿದನು ಮರ್ಝ ಮಾಯೆ ಕುಂತೀ
ಲಲನೆ ಹೆತ್ತಳು ಸುತರನೆಂದನು ಶೌರಿ ನಸುನಗುತ ೧೧

ಈತನಭಿಮತವಿದು ಜಗದ್ವಿ
ಖ್ಯಾತ ಸಾಹಸಿ ಪಾರ್ಥ ಹೇಳೈ
ಮಾತಿನಾಳಾಪವನು ಕೇಳುವೆ ಶ್ರುತಿರಸಾಯನವ
ಭೀತಿ ಬೇಡಿನ್ನೆನಲು ಬೇರೆಮ
ಗೇತರಭಿಮತವೇನ ಬೆಸಸಿದ
ಡಾತುಕೊಂಬೆನು ಶಿರದಲೆಂದನು ಪಾರ್ಥ ವಿನಯದಲಿ ೧೨

ನಕುಲ ನೀ ಹೇಳನುಮತವ ನಿ
ನ್ನುಕುತಿ ಸಮರವೊ ಸಾಮವೋ ಮೇಣ್
ಸುಕರ ಮಂತ್ರವನರುಹು ನೀನಿನ್ನಂಜಬೇಡೆನಲು
ಯುಕುತಿ ನಮಗಿನ್ನೇನುಭಯ ರಾ
ಜಕವ ಸಂತೈಸುವುದು ಬೇರೆ
ಮ್ಮುಕುತಿಯೆಲ್ಲಿಯದೆಂದನಾ ಮಾದ್ರೇಯನೊಲವಿನಲಿ ೧೩

ಆವುದಭಿಮತವೇನು ಹದ ಸಹ
ದೇವ ನೀ ಹೇಳೆನಲು ಬಿನ್ನಹ
ದೇವ ಸೇರದು ಸಂಧಿ ಸಂಗರವೆಮಗೆ ಸೇರುವುದು
ಆವ ವಿಧದಲಿ ಸಮರವನೆ ಸಂ
ಭಾವಿಸುವುದೆನೆ ನಗುತ ವರ ರಾ
ಜೀವನಾಭನು ಕಳುಹಿದನು ದ್ರೌಪದಿಯೆಡೆಗೆ ಚರರ ೧೪

ದೇವಿ ಚಿತ್ತೈಸುವುದು ವರ ವಸು
ದೇವಸುತನಟ್ಟಿದನು ಸಂ
ಭಾವಿಸುವುದರಿರಾಯರಲಿ ಸಂಧಾನ ಸೌರಂಭ
ನೀವು ಬಿಜಯಂಗೈದು ಚಿತ್ತದೊ
ಳಾವ ಹದನಾ ಹದನನಾ ರಾ
ಜೀವನಾಭಾದಿಗಳಿಗರುಹುವುದೆಂದರಾ ಚರರು ೧೫

ಏನು ಹದನೇನೆಲವೊ ವರ ಸಂ
ಧಾನವೇ ಕೌರವರೊಳದು ಸು
ಮ್ಮಾನವೇ ಪತಿಗಳಿಗೆ ಪಾಪಿಗಳಿರಿದರೋ ಸತಿಯ
ದಾನವಾಂತಕನೆಸಗುವನೆ ತ
ಪ್ಪೇನು ತಪ್ಪೇನೆನುತ ನಸು ಮುಸು
ಕ್ಬಾಸನಾಂಬುಜವದನೆ ಬಂದಳು ಕೃಷ್ಣನೋಲಗಕೆ ೧೬

ಭ್ರೂಲತೆಯ ಸುರಚಾಪದುರು ಕೇ
ಶಾಳಿಗಳ ಕಾರ್ಮುಗಿಲಪಾಂಗದ
ಸಾಲ ಕುಡಿಮಿಂಚುಗಳ ನೂಪುರ ರವದ ಮೊಳಗುಗಳ
ಆ ಲತಾಂಗಿಯ ಗಮನವೇ ಮಳೆ
ಗಾಲದಂತಿರೆ ಧಾರ್ತರಾಷ್ಟ್ರ ಕು
ಲಾಳಿ ನಿಲುವುದೆ ಪವನಜನ ಸಂಪ್ರತಿಯ ಸೇರುವೆಗೆ ೧೭

ಕವಿದ ಚಿತ್ರಾವಳಿಯ ದಡ್ಡಿಯ
ವಿವಿಧ ಭಟರುಗ್ಗಡಣೆಯಲಿ ವರ
ಯುವತಿ ಬಂದಳು ಸಖಿಯರೊಯ್ಯಾರದಲಿ ನೃಪಸಭೆಗೆ
ನವ ಬಳಾಹಕದೊಳಗೆ ಮಿಂಚಿನ
ಗವಿಸಹಿತ ಮರಿ ಮೇಘವಾವಿ
ರ್ಭವಿಸಿತೆನೆ ದಂಡಿಗೆಯನಿಳಿದಳು ಹೊಕ್ಕಳೋಲಗವ ೧೮

ಎಲೆ ಸಮೀರಕುಮಾರ ಸಂಪ್ರತಿ
ಗೆಳಸಿದ್ಯೆ ಕಲಿತನವ ನೀರೊಳು
ಕಲಕಿದ್ಯೆ ಕೈವಾರವಾದುದೆ ಕೌರವೇಂದ್ರನಲಿ
ಕಲಿಸಿದ್ಯೆ ಕೃಷ್ಣಂಗೆ ನೀತಿಯ
ಬಳಸಿದ್ಯೆ ಬಹುಮಂತವ ನರಕದೊ
ಳಿಳಿಸಿದ್ಯೆ ಶಶಿಕುಲವನೆಂದನಿಲಜನ ನೋಡಿದಳು ೧೯

ಬೇಡಲಟ್ಟುವನೇ ಮಹೀಪತಿ
ನಾಡೊಳೈದೂರುಗಳನವರಲಿ
ಮಾಡುವಾತನು ಕೃಷ್ಣನೇ ಸಂಧಾನವನು ನಿಮಗೆ
ಕೇಡಿಗನು ಕೌರವ ನೃಪಾಲನ
ಕೂಡಿ ಬದುಕುವ ಭೀಮಸೇನನೆ
ರೂಢಿಸಿತಲಾ ನಿಮ್ಮ ಸಿರಿ ಸೋದರರ ಸೇರುವೆಗೆ ೨೦

ಯತಿಗಳಾದಿರಿ ನೀವು ರೋಷ
ಚ್ಯುತರಲೇ ಬಳಿಕೇನು ಧರ್ಮ
ಜ್ಞತೆಯ ನೆಲೆಗಳನರಿದ ಮನವೆರಗುವುದೆ ಕಾಳಗಕೆ
ಕ್ಷಿತಿಯ ಪಾಲಿಸುವುದು ವಿರೋಧಿ
ವ್ಯತಿಕರವ ಬಿಡಿಸುವುದು ಕುಂತೀ
ಸುತರು ಕೌರವರೊಡನೆ ಸುಖದಲಿ ರಾಜ್ಯವಾಳುವುದು ೨೧

ಸೋಲ ಗೆಲವೇ ಕೌರವರ ಸಮ
ಪಾಳಿಯೊಳು ಸೋದರರು ನೀವ್ ಪಾಂ
ಚಾಲರಾವೇ ಹೊರಗು ನಿಮ್ಮೊಳು ಸಲುಗೆಯೇಕೆಮಗೆ
ಮೇಳವೇ ಸಿರಿ ಗಳಿಸಲರಿದು ಜ
ನಾಳಿ ಹೆಂಡಿರಪೂರ್ವವೇ ಕ್ಷಿತಿ
ಪಾಲಕರು ನೀವಾಗಲೆಮಗದು ಪರಮ ಪರಿಣಾಮ ೨೨

ಭೀಮ ಬಲವದರಾತಿ ಸೇನಾ
ಭೀಮ ಕುರುಕುಲ ಕುಸುಮಮಾರ್ಗಣ
ಭೀಮ ಮರೆದ್ಯೆ ಮಾನಿನಿಯ ಮಾನಾಪಹಾನಿಗಳ
ರಾಮನಬಲೆಗೆ ಕುದಿದ ಘನ ಸಂ
ಗ್ರಾಮವನು ನೀ ಕೇಳಿದರಿಯಾ
ಪ್ರೇಮದಲಿ ನೋಡೆನ್ನನೆಂದಳು ದ್ರೌಪದೀದೇವಿ ೨೩

ಧರೆಗೆ ಕಟ್ಟಭಿಮಾನ ಹೆಂಡಿರ
ಹರಿಬವಾ ಹರಿಬದಲಿ ಕೆಡುಹುವು
ದರಿಯುನವಗಡಿಸಿದೊಡೆ ಸಾವರು ಪಂಥವುಳ್ಳವರು
ಸುರ ನರೋರಗರೊಳಗೆ ನಿಮ್ಮೈ
ವರಿಗೆ ಸರಿಯಿಲ್ಲಬಲೆಯೊಬ್ಬಳ
ಹರಿಬದಲಿ ಹಂಗಾದಿರೆಂಬಪದೆಸೆಗೆ ನೋನುವರೆ ೨೪

ಮುಂದಲೆಯ ಹಿಡಿದೆಳೆದು ಸಭೆಯಲಿ
ತಂದು ಸೀರೆಯ ಸುಲಿದಡವದಿರ
ಮುಂದೆ ಮೌನದೊಳಿದ್ದರಲ್ಲದೆ ಪತಿಗಳುಸುರಿದರೆ
ಅಂದು ನೀ ಹಿಂದಿಕ್ಕಿ ಕೊಂಡುದ
ನಿಂದು ಮರೆದೈ ಸಂಧಿಗೋಸುಗ
ಮುಂದುವರಿದೈ ಕೃಷ್ಣಯೆಂದಳು ದ್ರೌಪದೀದೇವಿ ೨೫

ತನಯರೈವರು ವೀರ ಸಹದೇ
ವನು ಘಟೋತ್ಕಚನೀ ಸುಭದ್ರಾ
ತನಯನೆಮ್ಮಯ ತಂದೆ ಮೂರಕ್ಷೋಹಿಣಿಯ ಸೇನೆ
ಇನಿಬರೇ ಕಾದುವರು ದುಶ್ಶಾ
ಸನನ ರಕುತವ ಕುಡಿದು ಕುರುಕುಲ
ವನವ ಸುಡುವರು ನಿಮ್ಮ ಹಂಗೇಕೆಂದಳಿಂದುಮುಖಿ ೨೬

ವರಸತಿಯ ಬಿಸುಸುಯ್ಲ ಗಾಳಿಯೊ
ಳುರಿ ಚಡಾಳಿಸೆ ರೋಷಮಯದು
ಬ್ಬರದೊಳೌಡೊತ್ತಿದನು ಹಿಡಿದನು ಖತಿಯನಹಿತರೊಳು
ತರುಣಿ ಸೈರಿಸು ಸೈರಿಸಿನ್ನೀ
ಸುರಿವ ಕಂಬನಿಗಳಿಗೆ ಶತ ಸಾ
ವಿರ ಮಡಿಯ ಕಂಬನಿಯ ಸುರಿಸುವೆ ಹಗೆಯ ಹೆಂಡಿರಲಿ ೨೭

ಉರಿ ಹೊಗುವ ಮೀಸೆಗಳ ಬೆರಳಲಿ
ಮುರುಹಿ ವಾಮದ ಕರದಿ ತರುಣಿಯ
ಕುರುಳ ಸಂತೈಸಿದನು ಕಿಡಿಕಿಡಿಯೋಗಿ ಖಾತಿಯಲಿ
ನರಕಮರ್ದನ ಕೇಳು ಕೌರವ
ನರಿಗಳಿದಿರೇ ಕೇಳುವೆನು ಕುಲ
ಗಿರಿಗಳನು ತೊಡೆವೆನು ಕೃತಾಂತನ ಭಾಳದಕ್ಕರವ ೨೮

ಯಮಸುತನ ಹರುವೆಂತುಟೆಂದಾ
ಕ್ರಮಕೆ ಮೊಗದಿರುಹಿದೆನು ಬಳಿಕೀ
ಕಮಲವದನೆಯ ಹರಿಬವೆನ್ನದು ಪತಿಗಳಿನಿಬರಲಿ
ಎಮಗೆ ಸಂಪ್ರತಿಗಿಲ್ಲ ಮನ ಘನ
ಸಮರವೇ ಸರ್ವಾರ್ಥ ಕೋಪ
ಶ್ರಮಕೆ ರಿಪುರುಧಿರಾಂಬು ಪಾನವೆ ವಿಪುಳ ಫಲವೆಂದ ೨೯

ಕೆಡಹಿ ರಿಪುವನು ಕರುಳ ದಂಡೆಯ
ಮುಡಿಸುವೆನು ಮಾನಿನಿಗೆ ರಕುತವ
ಕುಡಿಯಲೆರೆವೆನು ಶಾಕಿನಿಯರಿಗೆ ತತ್ಸಹೋದರರ
ನಡೆದು ಸಂಧಿಯ ಮಾಡಿ ಮುರರಿಪು
ಕೊಡಿಸು ಸಾಕೈದೂರನಿವರಿಗೆ
ತಡೆಯದಾನೆರಡೂರ ಕೊಂಬೆನು ಕೌರವೇಂದ್ರನಲಿ ೩೦

ಏಳನೆಯ ಸಂಧಿ

ಸೂ. ದುರಿತನವಿಪಿನಕೃಶಾನು ಯದುಕುಲ
ವರಕುಶೇಶಯ ಭಾನು ನಿಜಪದ
ಶರಣಜನ ಸುರಧೇನು ಹೊಕ್ಕನು ಹಸ್ತಿನಾಪುರವ

ದೇವ ಸಂಧಿಯನೊಲಿದು ಮಾಡುವು
ದಾವು ಮುಖದಿರುಹಿದೆವುಯಿಾ ಸಹ
ದೇವನೀ ಸಾತ್ಯಕಿ ಯುಧಾಮನ್ಯುತ್ತಮೌಜಸರ
ಭಾವವೆಮ್ಮದು ಬಳಿಕಲರ್ಜುನ
ದೇವ ಧರ್ಮಜ ನಕುಲರೆಂಬುದ
ನಾವು ಮಿಸುಕುವರಲ್ಲ ಚಿತ್ತೈಸೆಂದನಾ ಭೀಮ ೧

ಕೆಲರು ಸಂಪ್ರತಿಗೊಲಿವರಿತ್ತಲು
ಕೆಲರು ವಿಗ್ರಹಕೆಳಸುವವರಿದ
ರೊಳಗೆ ನಿಶ್ಚಯವಿಲ್ಲದಿರೆ ನೃಪ ಕಾರ್ಯವೆಂತಹುದು
ತಿಳಿಯ ಹೇಳವನೀಶ ಪರಮಂ
ಡಲಕೆ ಪಯಣವ ಮಾಡುವೆವು ನಾ
ವಳುಕಿದವರಲ್ಲೆನಲು ಕೃಷ್ಣಂಗರಸನಿಂತೆಂದ ೨

ವಿದಿತವೈದೂರುಗಳ ಕೊಟ್ಟೊಡೆ
ಹದುಳವಿಡುವುದು ಮುನಿದರಾದೊಡೆ
ಕದನವನೆ ಕೈಕೊಳುವುದುಚಿತಾನುಚಿತದನುವರಿದು
ಹದನ ನೀನೇ ಬಲ್ಲೆ ಸಾಕಿ
ನ್ನಿದು ನಿಧಾನವು ಬಗೆಯಲೆಮ್ಮ
ಭ್ಯುದಯ ನಿಮ್ಮಾಧೀನವೆಂದನು ಧರ್ಮನಂದನನು ೩

ಪಯಣವನು ನಿಶ್ಚೈಸಿ ದನುಜಾ
ರಿಯನು ಬೀಳ್ಕೊಂಡವನಿಪತಿ ಪಾ
ಳಯದೊಳಗೆ ಸಾರಿಸಿದನಗ್ಗದ ಮಂಡಲೀಕರಿಗೆ
ನಯದೊಳಾ ಮರುದಿವಸ ಮಂಗಳ
ಮಯ ಮುಹೂರ್ತದ ಜೋಯಿಸರ ಜೋ
ಕೆಯ ನಿರ್ಗಮ ನಿರತನಾದನು ಕೃಷ್ಣನೊಲವಿನಲಿ ೪

ಮೊರೆಯೆ ದುಂದುಭಿ ಶಂಖ ಕಹಳಾ
ವರ ಮೃದಂಗಾದಿಗಳು ಭೂಸುರ
ಸುರಭಿಗಳ ಬಲವಂದು ದಧಿ ದೂರ್ವಾಕ್ಷತಾವಳಿಯ
ಧರಿಸಿ ಧರಣೀ ದೇವರನು ಸ
ತ್ಕರಿಸಿ ಕರತಳದಿಂದ ನಾಸಿಕ
ದೆರಲ ಚಂದ್ರೋದಯವನೀಕ್ಷಿಸಿ ದೇವ ಹೊರವಂಟ ೫

ಘನ ಬಳಾಹಕ ಸೈನ್ಯ ಸುಗ್ರೀ
ವನನು ನಿರ್ಮಳ ಮೇಘಪುಷ್ಪನ
ನನುವಿನಲಿ ಹೂಡಿದನು ದಾರುಕ ಹೇಮಮಯ ರಥವ
ಧನುವ ಶಸ್ತ್ರಾಸ್ತ್ರವ ಸುದರ್ಶನ
ಕನಕ ಕವಚ ಕೃಪಾಣವನು ಸ್ಯಂ
ದನದೊಳಿಳುಹೆಂದಸುರರಿಪು ಸಾತ್ಯಕಿಗೆ ನೇಮಿಸಿದ ೬

ಇವರಿಗವದಿರು ನೆಟ್ಟನೇ ಮುನಿ
ವವರು ನಾವಿವರವರು ಮತ್ತಂ
ತಿವರಿಗವನಿಯನೀಸಿ ಕೊಡುವುದು ನಮ್ಮ ಭರವಸಿಕೆ
ಅವಗಡಿಸಿದೊಡೆ ಕಾದುವುದು ಕೌ
ರವರು ಖುಲ್ಲರು ರಥದೊಳಗೆ ಕೈ
ದುವನು ತುಂಬೆಂದಸುರರಿಪು ಸಾತ್ಯಕಿಗೆ ನೇಮಿಸಿದ ೭

ಕಲಿತ ಸನ್ನಾಹದಲಿ ಸಾರಥಿ
ಸುಳಿಸಿದನು ಹೊಂದೇರನಭ್ರಕೆ
ತಳಿತವಮಳಚ್ಛತ್ರ ಚಾಮರ ಸಿತಪತಾಕೆಗಳು
ಅಳುಕೆ ನೆಲನಕ್ಷೋಣಿ ಬಲವಿ
ಟ್ಟಳಿಸಿ ನಡೆದುದು ರಥಕೆ ದಾನವ
ಕುಲದಿಶಾಪಟ ಕೃಷ್ಣ ಬಿಜಯಂಗೈದನೊಲವಿನಲಿ ೮

ಕಳುಹುತೈತಂದಖಿಳ ಪಾಂಡವ
ಬಲಕೆ ನೇಮವ ಕೊಟ್ಟು ಧರ್ಮಜ
ಫಲುಗುಣರ ನಿಲಿಸಿದನು ಸಹದೇವನನು ನಕುಲನನು
ಕಳುಹಿಸಿದನು ನೀ ಮರಳೆನಲು ಬೆಂ
ಬಳಿಯಲನಿಲಜನೈದಿ ಹಗೆಯಲಿ
ಕಲಹವನು ಮಸೆಯೆಂದು ನಂಗಬುಗೆಗೊಂಡು ಮರಳಿದನು. ೯

ದೇವಿಯರು ನೀವ್ ಮರಳಿಯೆನೆ ರಾ
ಜೀವನಾಭನ ಹೊರೆಗೆ ದ್ರೌಪದಿ
ದೇವಿ ಬಂದಳು ನೊಸಲ ಚಾಚಿದಳಂಘ್ರಿ ಕಮಲದಲಿ
ಸ್ಥಾವರಕೆ ಜಂಗಮಕೆ ನೀನೇ
ಜೀವಚೇಷ್ಟಕನವದಿರಂತ
ರ್ಭಾವವನು ನೆರೆ ಬಲಿಯಲಾಗದು ಸಂಧಿ ಕಾರ್ಯದಲಿ ೧೦

ಖಳರು ತಮ್ಮುನ್ನತಿಯ ಕೀಲನು
ಕಳಚಿ ಕಳೆದರು ಮರಳಿ ಮಾಡುವ
ಡಳುಕಿದರು ತನ್ನವರು ಪತಿಗಳೆ ಪರಮವೈರಿಗಳು
ಹಳಿವ ನೀನೇ ಬಲ್ಲೆಯಿನ್ನೆ
ನ್ನಳಿವ ನೀನೇ ಬಲ್ಲೆ ಹಿರಿದಾ
ಗಳಲಿದೆನು ಸಲಹೆಂದು ಕಂಬನಿದುಂಬಿದಳು ತರಳೆ ೧೧

ಏಳು ತಾಯೆ ಸರೋಜಮುಖಿ ವಿಪಿ
ನಾಲಯದೊಳತಿ ನವೆದೆ ನಿನ್ನವ
ರಾಳಿಗೊಂಡಂದವನು ಬಲ್ಲೆನು ನಿನ್ನ ಹರಿಬದಲಿ
ಕಾಳಗವನೇ ಬಲಿದು ತಹೆನಿವ
ರೇಳಿಲವ ಮಾಡಿದೊಡೆ ರಿಪುಗಳ
ಸೀಳಿ ಕರುಳನು ಮುಡಿಸದಿಹೆನೇ ನಿನ್ನ ಕಬರಿಯಲಿ ೧೨

ದೇವಕಿಯ ಮೇಲಾಣೆ ವರ ವಸು
ದೇವನಂಘ್ರಿಗಳಾಣೆ ಮನುಮಥ
ದೇವನಾಣೆ ನಿಧಾನವನು ಕೇಳಬಲೆ ನಿನ್ನಾಣೆ
ನಾವು ಸಂಧಿಯ ನೆವದಲವದಿರ
ಭಾವವನು ಕಲಿಮಾಡಿ ಕೋಪವ
ತೀವಿ ಸಂಧಿಯ ಮುರಿದು ಬಹೆವಿದ ನಂಬು ನೀನೆಂದ ೧೩

ಮರಳಿದಳು ತರಳಾಕ್ಷಿ ಮುರರಿಪು
ಬರುತಲಾ ಬಟ್ಟೆಯಲಿ ಕಂಡನು
ವರ ಭರದ್ವಾಜಾಖ್ಯ ಗೌತಮ ಕಣ್ವಮುನಿವರರ
ಉರಗಮಾಲಿ ಮತಂಗ ಗಾರ್ಗ್ಯಾಂ
ಗಿರಸ ನಾರದ ಶುಕ ಪರಾಶರ
ಪರಶುರಾಮ ಶ್ವೇತಕೇತು ಪ್ರಮುಖ ಮುನಿವರರ ೧೪

ಮುನಿವರರನುಪಚರಿಸಿದನು ಹ
ಸ್ತಿನಪುರಿಗೆ ಸಂಗಾತ ಬಹೆವೆಂ
ದೆನಲು ಬರಹೇಳಿದನು ಸಕಲ ಮಹಾ ತಪೋಧನರ
ಘನ ಕುಶಸ್ಥಳಪುರದಲೆಡೆಗೈ
ದನು ಸುಯೋಧನನಲ್ಲಿಗಟ್ಟಿದ
ವಿನುತ ದೂತರು ಬಿನ್ನವಿಸಿದರು ಮುರಹರನ ಬರವ ೧೫

ಕೇಳಿದನು ಧೃತರಾಷ್ಟ್ರನಾಗ ಕೃ
ಪಾಳುವಿನ ಗಮನವನು ಚಿತ್ತವ
ಹೂಳಿ ಹೆಚ್ಚಿದ ಹರುಷದಲಿ ಉಬ್ಬೆದ್ದನಡಿಗಡಿಗೆ
ಹೇಳಿದನು ವಿದುರಂಗೆ ಭಂಡಾ
ರಾಲಯದೊಳುಳ್ಳಮಳ ಮೌಕ್ತಿಕ
ಜಾಳಿಗೆಯ ಪೆಟ್ಟಿಗೆಯೊಳಾಯಿಸು ವರ ಸುರತ್ನಗಳ ೧೬

ಎಲೆ ವಿದುರ ಕೇಳೈ ಸುಯೋಧನ
ನುಳಿಯೆ ಸಕಲ ಮಹಾ ಪ್ರಧಾನರು
ನಳಿನನಾಭನನಿದಿರುಗೊಳಲಿ ಕೃತಾರ್ಥರಾದವರು
ಹೊಳಲು ಗುಡಿ ತೋರಣದಲೆಸೆಯಲಿ
ಕಳಸ ಕನ್ನಡಿ ಸಹಿತ ನಡೆಯಲಿ
ನಳಿನವದನೆಯರೆಂದು ನೇಮಿಸಿದನು ಮಹೀಪಾಲ ೧೭

ತೆಗೆ ಸುವಸ್ತುವನೀಯದಿರು ಹರಿ
ಹಗೆ ಕಣಾ ಕುಂತೀಕುಮಾರರು
ಹಗೆಗಳೇ ಮನ್ನಿಸಿದರೆಂದುಳುಹುವನೆ ಮುರವೈರಿ
ನಗರಿಗಾತನು ಬರಲಿ ಯಾದವ
ನಗಡುತನಕೌಷಧಿಯ ಬಲ್ಲೆನು
ಬಿಗಿದು ಕೆಡಹುವೆನೆಂದು ನುಡಿದನು ಕೌರವರ ರಾಯ ೧೮

ಖಾತಿಗೊಂಡನು ಭೀಷ್ಮನೆಲೆ ಕಡು
ಪಾತಕನೆ ನೀ ಕೃಷ್ಣನನು ಬಿಗಿ
ವಾತನೇ ಬಳಿಕೇನು ಬಲ್ಲೆನು ನಿನ್ನ ಸಾಹಸವ
ಈತ ನುಡಿದೀ ಮಾತ ಕೇಳಲು
ಪಾತಕವು ಬಹುದೆಂದು ಗಂಗಾ
ಜಾತನೋಲಗದಿಂದ ಸರಿದನು ತನ್ನ ಮಂದಿರಕೆ ೧೯

ಪುರವ ರಚಿಸಿದರುದಯದಲಿ ಬಿ
ತ್ತರ ಮಿಗಲು ಗಾಂಗೇಯ ಗೌತಮ
ಗುರು ವಿದುರ ಶಲ್ಯಾದಿ ಸುಜನರು ಬಂದರಿದಿರಾಗಿ
ತರುಣಿಯರು ಕೆಂದಳಿರ ಕಲಶದ
ಕರತಳದ ಗರುವಾಯಿಯಲಿ ಪಂ
ಕರುಹನಾಭನನಿದಿರುಗೊಂಡರು ವಿವಿಧ ವಿಭವದಲಿ ೨೦

ಹೊಳಹು ಮಿಗೆ ದೂರದಲಿ ಗರುಡನ
ಹಳವಿಗೆಯ ಕಂಡಖಿಳ ಜನವಂ
ಜುಳಿಯನಿಟ್ಟುದು ಭಾಳದಲಿ ಪರಿಶುದ್ಧಭಾವದಲಿ
ನಳಿನನಾಭನ ದಿವ್ಯಮೂರ್ತಿಯ
ಲಲಿತ ಕಾಂತಿಯ ಕಡಲೊಳಗೆ ನೆರೆ
ಮುಳುಗಿದುದು ಪುರಜನದ ಕಣುಮನವೊಂದು ನಿಮಿಷದಲಿ ೨೧

ಮಂದಿ ಮೈಯಿಕ್ಕಿತು ಮುರಾಂತಕ
ನಿಂದು ಮನದೊಲವಿನಲಿ ಗಂಗಾ
ನಂದನ ದ್ರೋಣಾದಿಗಳನೆತ್ತಿದನು ಕರುಣದಲಿ
ಮಂದಿರದ ಸುಕ್ಷೇಮ ಕುಶಲವ
ನಂದು ಕೇಳಿದು ವೀಳಯವನಾ
ಮಂದಿಗಿತ್ತನು ದೇವ ಬಂದನು ಹಸ್ತಿನಾಪುರಿಗೆ ೨೨

ಗಿಳಿಯ ತುಂಬಿಯ ಹಂಸೆಗಳ ಕೋ
ಗಿಲೆಯ ಕೊಳರ್ವಕ್ಕಿಗಳ ಕೊಂಚೆಯ
ಕೊಳಲುವಕ್ಕಿಯ ಜಕ್ಕವಕ್ಕಿಯ ನವಿಲು ಪಾರಿವದ
ಕಲರುಚಿಯ ಕರ್ಣಾಮೃತದ ತನಿ
ವಳೆಯ ಕರೆದುದು ಯಾದವೇಂದ್ರನ
ಬಲದ ಕಿವಿಗಳಲಿಭಪುರಿಯ ಹೊರವಳಯದುದ್ಯಾನ ೨೩

ನಸು ಬಿರಿದ ಪರಿಪಕ್ವ ದಾಡಿಮ
ವಸರದೊಳಗರವಟ್ಟಿಗೆಯ ದರ
ಹಸಿತ ಪಂಕಜಗಳಿತ ಮಕರಂದದ ತಟಾಕದಲಿ
ರಸಭರಿತ ಖರ್ಜೂರ ಫಲ ಸಂ
ಪ್ರಸರ ಛತ್ರವನೆಸಗಿಯುಪವನ
ವೆಸೆದುದೈ ಧಾರ್ಮಿಕನವೊಲು ಯದುರಾಯನಿದಿರಿನಲಿ ೨೪

ಎಳಲತೆಯನೆರಗಿಸುತ ಮಲೆತರೆ
ತಳಿರುಗಳನಲ್ಲಾಡಿ ವರ ಪರಿ
ಮಳದ ಕಪ್ಪವ ಕೊಂಡು ಮುರಿದುಂಬಿಗಳ ಗೀತವನು
ಸಲೆ ಸೊಗಸಿ ಮಕರಂದ ನದಿಯಲಿ
ತಳಿತು ಬೀಡನು ಬಿಡಂತ ಜನದಲಿ
ಸುಳಿದುದೈ ತಂಗಾಳಿ ಭೂಮಿಪಾಲನಂಗದಲಿ ೨೫

ಮಘಮಘಿಪ ಹೊಂಬಾಳೆಗಳ ರಸ
ವೊಗುವ ಮಧುರದ್ರಾಕ್ಷೆಗಳ ನಿಡು
ಮುಗಿಲ ತುಡುಕುವ ತೆಂಗುಗಳ ನೆರೆ ಕಾತ ಪನಸುಗಳ
ಬಿಗಿದ ಪಣ್ಣೊನೆವಾಳೆಗಳ ಸೊಂ
ಪೊಗುವ ಕರ್ಪೂರ ದ್ರುಮೌಘದ
ಸೊಗಸು ಸೆಳೆದುದು ಮನವನಾ ಗಜನಗರದುಪವನದ ೨೬

ಲಲಿತ ಶುಕಚಯ ಚಂಚು ಪುಟದಿಂ
ದಳಿತ ಜಂಬೂ ಪಕ್ವಫಲ ರಸ
ಲುಳಿತ ನವಮಕರಂದ ಮಧುರೋರ್ಝರ ನಿವಾತದಲಿ
ತಳಿತ ಕಿನ್ನರ ಮಿಥುನ ಸುಖ ಪರಿ
ಮಿಳಿತ ಗೀತಶ್ರವಣ ಸನ್ನುತ
ಪುಳಿನಸುಪ್ತ ಮರಾಳವೆಸೆದುದು ಗಜಪುರೋದ್ಯಾನ ೨೭

ಅರರೆ ಪಾತಾಳದ ವಿಳಾಸಿನಿ
ಯರಿಗೆ ಚೌಕಿಗೆಯೋ ಸುದುರ್ಗದ
ಹಿರಿಯಗಳೊ ಬಲುಗೋಟೆಯೋ ನಿಚ್ಚಣಿಕೆಯೋ ದಿವದ
ಮುರಿಮುರಿದ ಹುಲಿಮುಖದ ಹೇಮದ
ತರದ ತೆನೆಗಳ ವಜ್ರಮಯ ಬಂ
ಧುರ ಕವಾಟಸ್ಫುಟದಲೆಸೆದುದು ಹಸ್ತಿನಾನಗರ ೨೮

ಹೊಗಳುತೈತಂದಸುರರಿಪು ಗಜ
ನಗರವನು ಹೊಕ್ಕನು ಸುಯೋಧನ
ನಗಣಿತೈಶ್ವರ್ಯವ ಮಹಾದೇವನುತ ನಲವಿನಲಿ
ಬಿಗಿದ ಬೀದಿಯ ನಯದ ನೆಲೆಗ
ಟ್ಟುಗಳ ಮಣಿಮಯ ಹೇಮದುಪ್ಪರಿ
ಗೆಗಳ ಕೇರಿಗಳೊಳಗೆ ಬರುತಿರ್ದನು ಮುರಧ್ವಂಸಿ ೨೯

ಮಂದದಲಿ ಸುಳಿವಾನೆ ಕುದುರೆಯ
ಸಂದಣಿಯ ಕೀಲಿಸಿದ ಭೂಮಿಪ
ರಂದಣದ ಸಾಲುಗಳ ತೆಕ್ಕೆಯ ಹಳಿಯದಾಳುಗಳ
ಮಂದಿಯಲಿ ಹೊಗಲನಿಲಗುಬ್ಬಸ
ವೆಂದರುಳಿದವರಳವೆಯೆನಲರ
ವಿಂದನಾಭನು ಬಂದನಾ ಧೃತರಾಷ್ಟ್ರನರಮನೆಗೆ ೩೦

ಇದಿರುಗೊಂಡನು ಕಾಣಿಕೆಯನಿ
ಕ್ಕಿದನು ಕುಶಲ ಕ್ಷೇಮವನು ಕೇ
ಳಿದನು ಬಕುತಿಯಲೆರಗಿದನು ಚರಣದಲಿ ಧೃತರಾಷ್ಟ್ರ
ಸದನವನು ಹೊಕ್ಕಂತೆ ನಿಮಿಷಾ
ರ್ಧದಲಿ ಕುಳ್ಳಿರ್ದನಿಬರನು ಕಳು
ಹಿದನು ಕಾರುಣ್ಯದಲಿ ಗದುಗಿನ ವೀರ ನಾರಯಣ ೩೧

ಎಂಟನೆಯ ಸಂಧಿ

ಸೂ. ಶರಣದೇಹಿಕ ದೇವನೆಂಬೀ
ಬಿರುದ ಮೆರೆಯಲು ರಾಯಭಾರವ
ಧರಿಸಿ ಕೌರವನರಮನೆಗೆ ನಡೆತಂದನಸುರಾರಿ

ಕೇಳು ಜನಮೇಜಯ ಧರಿತ್ರೀ
ಪಾಲ ಮುರಹರ ಗುರು ನದೀಜರ
ಬೀಳುಕೊಟ್ಟನು ಕೃಪನ ಮನ್ನಿಸಿ ಮನೆಗೆ ಕಳುಹಿದನು
ಆಲಯಂಕೆ ವಿದುರಂಗೆ ಕೊಟ್ಟನು
ವೀಳಯವನೊಡನೆಯ್ದಿ ಬಂದ ನೃ
ಪಾಲಕರ ಮೊಗಸನ್ನೆಯಲಿ ಕಳುಹಿದನು ಮನೆಗಳಿಗೆ ೧

ಶೌರಿ ಕಾಣಿಸಿಕೊಂಡನಾ ಗಾಂ
ಧಾರಿಯನು ಸುಕ್ಷೇಮ ಕುಶಲವ
ನಾರಯಿದು ಕಾಣಿಕೆಯ ಕೊಂಡನು ಕೊಟ್ಟನುಡುಗೊರೆಯ
ಕೌರವನು ತನ್ನರಮನೆಗೆ ಹರಿ
ಬಾರದಿರನೆಂದಖಿಳ ವಿಧದಲಿ
ಸಾರ ವಸ್ತುವ ತರಿಸಿಯಾರೋಗಣೆಗೆ ಮಾಡಿಸಿದ ೨

ನಡುವೆ ಮಣಿಮಂಚದಲಿ ಮೇಲ್ವಾ
ಸಡಕಿಲನು ಹಚ್ಚಡಿಸಿದರು ಮೇ
ಲಡರಿದವು ಮಣಿಖಚಿತ ಚಿತ್ರದ ಮೇಲುಕಟ್ಟುಗಳು
ಉಡುಗೊರೆಯ ತರಿಸಿದನು ರಾಯನ
ಮಡದಿಯರು ಹೊಂಗಳಸ ಜಲವನು
ಪಡಿಗವನು ಹಿಡಿದಸುರರಿಪುವಿನ ಬರವ ಹಾರಿದರು ೩

ತವತಮಗೆ ಗಾಂಗೇಯ ಗುರು ಕೃಪ
ರವಿಸುತಾದಿಗಳಸುರರಿಪು ನಿಜ
ಭವನಕೈತಹನೆಂದು ಸವೆದರು ಸಾರವಸ್ತುಗಳ
ಅವನಿಪನ ಬೀಳ್ಕೊಟ್ಟು ಕೌರವ
ಭವನವನು ಹೊರವಂಟು ವರ ಭಾ
ಗವತಮಸ್ತಕರತ್ನ ವಿದುರನ ಮನೆಗೆ ನಡೆತಂದ ೪

ತೊಲಗಿದವು ಜನಮನದ ಬಲುಗ
ತ್ತಲೆಗಳಿದಿರಲಿ ಕಂಡ ಜೀವರ
ಹಲವು ಜನ್ಮಾಂತರದ ದುರಿತಾಂಬೋಧಿ ಬತ್ತಿದವು
ಬಳಿಕ ಮುನಿಗಳು ಸಹಿತ ಕರುಣಾ
ಜಲಧಿ ತಾನಾ ಕೌರವೇಂದ್ರನ
ಹೊಳಲೊಳಗೆ ನಿಜ ಶರಣನಿಹ ಮನೆಗಾಗಿ ಬರುತಿರ್ದ ೫

ಕರಣ ನಿರ್ಮಳವಾಯ್ತು ಮನವು
ಬ್ಬರಿಸಿತತಿ ಪರಿತೋಷದೇಳಿಗೆ
ಪರಮ ಸುಖದಲಿ ತನುವ ಮರೆದನು ನಯನಜಲವೊಗಲು
ಎರಡುದೋರದ ಗಾಢಭಕ್ತಿಯ
ಭರದ ಲವಲವಿಕೆಯಲಿ ನಿಜ ಮಂ
ದಿರವ ಹೊರವಂಡುತ್ತ ಕಂಡನು ವಿದುರನಚ್ಯುತನ ೬

ಸಿರಿಮೊಗದ ಕಿರುಬೆಮರ ತೇಜಿಯ
ಖುರಪುಟದ ಕೆಂದೂಳಿ ಸೋಂಕಿದ
ಸಿರಿಮುಂಡಿಯ ಕುಡಿಮೀಸೆಯಲಿ ಕೆಂಪಡರ್ದ ರೇಣುಗಳ
ಖರ ಮರೀಚಿಯ ಜಳಕೆ ಬಾಡಿದ
ತರುಣ ತುಲಸಿಯ ದಂಡೆಯೊಪ್ಪುವ
ಗರುವ ದೇವನ ಬರವ ಕಂಡನು ಬಾಗಿಲಲಿ ವಿದುರ ೭

ತನುವ ಮರೆದನು ಪುಳಕಜಲದಲಿ
ನನೆದು ನಾರಾಯಣನ ಪದ ದರು
ಶನದ ಹರುಷಾರಣ್ಯದಲಿ ಮನ ಹೊಲಬುದಪ್ಪಿದನು
ನೆನೆವ ಸನಕಾದಿಗಳಿಗೊಮ್ಮೆಯು
ಮನಗೊಡದ ಮಹಿಮಾವಲಂಬನು
ಮನೆಗೆ ಬಹ ಕರುಣಾಳುತನ ಹೊಸತೆಂದು ಹೊಂಗಿದನು ೮

ವೇದದರಿಕೆಗಳಡಗದುಪನಿಷ
ದಾದಿ ದಿವ್ಯಸ್ತುತಿಯ ಗಡಣೆಗೆ
ಹೋದ ಹೊಲಬಳವಡದ ಮುನಿಗಳ ಮುಖಕೆ ಮನಗುಡದ
ಕಾದಿ ಕಡಗುವ ತಾರ್ಕಿಕರು ಬೆಂ
ಡಾದರಲ್ಲದೆ ನಿಜವನರಿಯದ
ನಾದಿ ಸಿದ್ಧನ ಬರವ ಕಂಡನು ಬಾಗಿಲಲಿ ವಿದುರ ೯

ತೊಳಲುವುಪನಿಷದರಿಕೆಯಿವು ಶ್ರುತಿ
ಗಳ ಸರಾಗದ ಬಳಕೆಯಿವು ಮುನಿ
ಗಳ ಸಮಾಧಿಗಳಾದಿಯಿವು ಯೋಗಿಗಳ ಬಗೆಗಳಿವು
ಎಲೆಲೆ ಬಕುತರ ಭಾಗ್ಯಶಾಲಿಯ
ಬೆಳೆಗಳಿವೆಲಾ ಶಿವಯೆನುತ ಪದ
ನಳಿನಯುಗಳದಲೊಡಲನೀಡಾಡಿದನು ಹರುಷದಲಿ ೧೦

ನೋಡಿದನು ಮನದಣಿಯೆ ಮಿಗೆ ಕೊಂ
ಡಾಡಿದನು ಬೀದಿಯಲಿ ಹರಿದೆಡೆ
ಯಾಡಿದನು ಭ್ರಮೆಯಾಯ್ತು ವಿದುರಂಗೆಂಬ ಗಾವಳಿಯ
ಕೂಡೆ ಕುಣಿದನು ಮನೆಯ ಮುರಿದೀ
ಡಾಡಿದನು ಮೈಮರೆದ ಹರುಷದ
ಗಾಡಿಕೆಯಲಪ್ರತಿಮನೆಸೆದನು ಬಕುತಿ ಕೇಳಿಯಲಿ ೧೧

ಹಸಿದು ನಾವೈತಂದರೀ ಪರಿ
ಮುಸಗಿ ಕುಣಿದಾಡಿದೊಡೆ ಮೇಣೀ
ವಸತಿಯನು ಸುಗಿದೆತ್ತಿ ಬಿಸುಟರೆ ತನಗೆ ತಣಿವಹುದೆ
ವಸುಮತಿಯ ವಲ್ಲಭರು ಮಿಗೆ ಪ್ರಾ
ರ್ಥಿಸಿದೊಡೊಲ್ಲದೆ ಬಂದೆವೈ ನಾ
ಚಿಸದಿರೈ ಬಾ ವಿದುರಯೆನುತೊಳಹೊಕ್ಕನಸುರಾರಿ ೧೨

ನೆರೆಯೆ ಕೃತ್ಯಾಕೃತ್ಯ ಭಾವವ
ಮರೆದು ಕಳೆದನು ಮನ ಮುರಾರಿಯ
ನಿರುಕಿಕೊಂಡಂದು ಕಂಗಳೊಡೆವೆಚ್ಚುವು ಪದಾಬ್ಜದಲಿ
ಅರಿವು ಮಯಣಾಮಯದ ಭಕ್ತಿಯೊ
ಳೆರಗಿಸಿದ ಪುತ್ಥಳಿಯವೊಲು ಕಡು
ಬೆರಗ ಕೇಣಿಯ ಕೊಂಡು ಮೌನದೊಳಿದ್ದನಾ ವಿದುರ ೧೩

ಒಲವರವೆ ಕೌತುಕವು ಪಾಲ್ಗಡ
ಲೊಳಗೆ ಮಲಗುವ ವಿಷ್ಣು ವಿದುರನ
ನಿಳಯದೊಳಗೊಕ್ಕುಡಿತೆ ಹಾಲಲಿ ಹಸಿವ ನೂಕಿದನು
ಹೊಲಬುಗೆಡಿಸಿದನಖಿಳ ನಿಗಮಂ
ಗಳನು ತನ್ನರಿಕೆಯಲಿ ಭಜಕಂ
ಗೊಲಿದು ತಾನೈತರಲು ಕರುಣದ ಘನತೆಯೆನೆ ಲೋಕ ೧೪

ಹರಿಯ ಪದಕಮಲಾಭಿಷೇಕದ
ವರ ಪಯೋಬಿಂದುಗಳು ಕೌರವ
ನರಮನೆಯನೊಳಕೊಂಬವೋಲ್ ಕಡಲಾಗಿ ಕೈಗೊಳಲು
ಅರರೆ ಮುರಹರನೊಡನೆ ಹಾಲಿನ
ಶರಧಿ ಮೇರೆಯನೊಡೆದುದಿಳೆಗ
ಚ್ಚರಿಯೆನುತ ಭೀಷ್ಮಾದಿಗಳು ಹೊಗಳಿದರು ಮುರಹರನ ೧೫

ತೊಲಗಿದಸು ಬಂದಂತೆ ತರಣಿಯ
ಹೊಳಹು ಸೋಂಕಿದ ಜಕ್ಕವಕ್ಕಿಯ
ಬಳಗದಂತಿರೆ ಕೃಷ್ಣರಾಯನ ಬರವ ತಾ ಕೇಳ್ದು
ಪುಳಕ ಪಸರಿಸಿ ಪರಮಹರುಷವ
ತಳೆದು ದೇವನ ಕಾಣಿಕೆಯ ಕಂ
ಗಳಿಗೆ ಕಡುಲೋಲುಪತೆ ಮಿಗೆ ಹರಿತಂದಳಾ ಕುಂತಿ ೧೬

ಬರಲು ಕಂಡಸುರಾರಿ ಮಂಚದೊ
ಳಿರದೆ ಧಿಮ್ಮನೆ ನಿಂದು ನರರಾ
ಚರಣೆಗಳ ನಾಟಕವ ತಾನೇ ನಟಿಸಿ ತೋರಿದನು
ಹಿರಿಯರಿಗೆ ತಾ ಹಿರಿಯನೆಂಬೀ
ಗರುವತನವನು ಬಿಸುಟು ಕುಂತಿಗೆ
ಕರವ ಮುಗಿದೆರಗಿದನು ಮುನಿಜನನಿಕರ ಥೇಯೆನಲು ೧೭

ಅಮಿತ ಕರುಣಾಸಿಂಧುವಿನ ಪದ
ಕಮಲದಲಿ ಬಂದೆರಗಿ ಪುಳಕೋ
ದ್ಗಮದ ತನಿ ಸುಖಪಾನರಸ ಸೌರಂಭದಲಿ ಮುಳುಗಿ
ಗಮಿಸಲರಿಯವು ಗರುವ ವೇದ
ಪ್ರಮಿತಿಗಳು ನೀವೆಂತು ನಡೆತಂ
ದೆಮಗೆ ಗೋಚರವಾದಿರೆನುತವೆ ಹೊಗಳಿದಳು ಕುಂತಿ ೧೮

ದೇವಕಿಯ ವಸುದೇವನನು ಬಲ
ದೇವ ಸೌಭದ್ರಾದಿ ಯದು ಭೂ
ಪಾವಳಿಯ ಸುಕ್ಷೇಮ ಕುಶಲವ ಕುಂತಿ ಬೆಸಗೊಳಲು
ದೇವ ನಗೆಮೊಗದಿಂದ ವರ ವಸು
ದೇವ ದೇವಕಿಯಾದಿ ಯಾದವ
ರಾ ವಿಳಾಸ ಮಹೀಶರಿರವನು ಕುಂತಿಗರುಹಿದನು ೧೯

ಯಮತನುಜನಧಿಕನು ಹಿಡಿಂಬಾ
ರಮಣನತಿ ಬಲ್ಲಿದನು ಪಾರ್ಥನ
ವಿಮಳ ವಿಗ್ರಹ ಲೇಸು ಸಕಲ ಮಹೀಶ ಪರಿವೃತರು
ಯಮಳರಿರವತಿ ಚೆಲುವು ನೇಹದ
ರಮಣಿಯಾಕೆಯ ಸುತರು ಮುಹದು
ದ್ಯಮರು ಕೇಳೆಂದಸುರರಿಪು ಕುಂತಿಗೆ ನಿಯಾಮಿಸಿದ ೨೦

ನರನ ಮಗನಭಿಮನ್ಯು ಕುಶಲನು
ವರ ಸುಭದ್ರಾದೇವಿ ಮೊದಲಾ
ಗಿರಲು ಬಾಂಧವರೆಲ್ಲ ಜೀವಂತರು ನಿಧಾನಿಸಲು
ಪರಮ ಮಿತ್ರರು ತಮ್ಮೊಳೊಂದಾ
ದರು ದ್ರುಪದನಕ್ಷೋಣಿ ಸೇನೆಯ
ನೆರವು ಬಂದುದು ರಾಜಕಾರ್ಯದ ಬಳಕೆ ಲೇಸೆಂದ ೨೧

ಅದಿತಿ ಮಕ್ಕಳ ಹಡೆದುದೇ ಲೋ
ಕದಲಿ ಫಲ ಕೌಸಲೆ ಕುಮಾರರ
ಪದೆದು ಹಡೆದುದೆ ಸಫಲ ವಿನತೆಗೆ ಮಕ್ಕಳಾಯ್ತು ಫಲ
ಮುಂದದಿ ನೀನೇ ಮಕ್ಕಳನು ಪಡೆ
ದದುವೆ ಫಲ ಕೇಳೆಂದು ಪರಿತೋ
ಷದಲಿ ಕುಂತಿಯ ಹೊಗಳಿದನು ಮುರವೈರಿಯುಚಿತದಲಿ ೨೨

ಲೋಕ ಮೆಚ್ಚಲು ನಿನ್ನ ಸುತರು ದೃ
ಢೈಕಸತ್ಯರು ನುಡಿದ ಕಾಲವ
ನೂಕಿದರು ರಾಜ್ಯಾಭಿಲಾಷೆಗೆ ನೆರಹಿದರು ಬಲವ
ಆ ಕುಮಾರರಿಗರ್ಧ ರಾಜ್ಯವ
ನೀ ಕುಠಾರರಲೀಸಿಕೊಡುವ ವಿ
ವೇಕದಲಿ ತಾ ಬಂದೆನೆಂದನು ಕುಂತಿಗಸುರಾರಿ ೨೩

ಪರಮ ಪರಿತೋಷದಲಿ ಕೃಷ್ಣನ
ವರಸುಧಾಮಯ ವಚನವನು ಪಂ
ಕರುಹಮುಖಿ ಕೇಳುತ್ತೆ ನನೆದಳು ನಯನವಾರಿಯಲಿ
ಮುರಮಥನನಾ ಕುಂತಿಗೆಲ್ಲವ
ನೊರೆದು ವಿದುರನ ಕರೆದು ಕೌರವ
ನರಮನೆಯ ಸಮಯವನು ನೋಡಿದು ತಮಗೆ ಹೇಳೆಂದ ೨೪

ಹೋಗು ನೀನಾತಂಗೆ ಪಾಂಡವ
ರಾಗಸಮುದಯ ಬಂದನೆಂಬುದ
ನೀಗಳರುಹುವುದಾತ ಮಾಡಿದ ಗುಣದ ಬೆಳವಿಗೆಯ
ತಾಗು ಬಾಗಿನ ಹವಣನಾತನ
ಲಾಗ ನೋಡುವೆವೆನಲು ಕುರುಕುಲ
ಸಾಗರಾಗ್ನಿಯ ಮನೆಗೆ ಬಂದನು ವಿದುರ ಹರಿ ಬೆಸಸೆ ೨೫

ಓಲಗದೊಳಿರ್ದಖಿಳ ಮೂರ್ಖರ
ಮೌಳಿಯನು ಕಂಡವಧರಿಸು ಸಿರಿ
ಲೋಲ ಬಿಜಯಂಗೈಯಲವಸರವುಂಟೆ ಹೇಳೆನಲು
ನಾಳೆ ಕಾಣಿಸಿ ಕೊಂಬೆವಿನ್ನೇ
ನಾಳಿಕಾರನ ಬರವು ಹಗೆವರ
ಪಾಲಿಸುವ ಭರ ಸಂಧಿಕಾರ್ಯಕೆ ಬಾರದಿರನೆಂದ ೨೬

ನೋಡಿರೈ ಪಾಂಡವರು ಪಾತಕ
ರಾಡಿದಾಟವನಾಡಿದೊಡೆ ಯಿ
ನಾಡೊಳಗಹುದು ಸಲುವುದವನಿಯೊಳಧಿಕ ಲೇಸೆನಿಸಿ
ರೂಢಿಯೊಳಗಾಚಾರವಡಗಿತು
ಜೋಡೆಯಲಿ ಜನಿಸಿದರನೀ ಬೀ
ಡಾಡಿ ಕೂಡಿದನೆಂದು ಹೊಯಿದನು ರವಿಸುತನ ಕರವ ೨೭

ನಾಳೆ ಬರಹೇಳೆಂದು ವಿದುರನ
ಬೀಳುಕೊಟ್ಟನು ಬೇಹ ಭಟರಿಗೆ
ವೀಳೆಯವ ನೀಡಿದನು ಹರಿದುದು ರಾಯನಾಸ್ಥಾನ
ಜಾಳಿಸಿತು ತಮ ಮೂಡಣಾದ್ರಿಯ
ಮೇಲೆ ತಲೆದೋರಿದನು ರವಿ ಭೂ
ಪಾಲ ಕೌರವನಂದಿನೊಡ್ಡೋಲಗವ ರಚಿಸಿದನು ೨೮

ಕರೆಸಿದನು ಮಣಿಮಕುಟ ಕಿರಣದ
ಗರುವರನು ಗಾಢಪ್ರತಾಪರ
ಬರಿಸಿದನು ತೂಕದ ಮಹಾ ಮಂಡಳಿಕ ಮನ್ನೆಯರ
ಧುರವಿಜಯ ಸಿದ್ಧರನು ಚಾಮಿಾ
ಕರದ ಗದ್ದುಗೆಯಖಿಳ ಸಾಮಂ
ತರನು ಪೃಥ್ವೀಪಾಲರನು ನೆರಹಿದನು ಭೂಪಾಲ ೨೯

ಬಲದ ಗದ್ದುಗೆಗಳಲಿ ಭಟರ
ಗ್ಗಳೆಯ ರವಿಸುತ ನದಿಯ ಮಗ ನೃಪ
ತಿಲಕ ದುಶ್ಶಾಸನ ಕೃಪ ದ್ರೋಣಾದಿ ನಾಯಕರು
ಹೊಳೆವ ರತುನದ ಸಾಲ ಮಕುಟದ
ಚೆಲುವಿಕೆಯ ಸೌರಂಭದಲಿ ಗಜ
ಗಲಿಸಿದರು ಮಾಣಿಕ್ಯಮಯ ಭೂಷಣ ವಿಳಾಸದಲಿ ೩೦

ಸತಿಸಹಿತ ಧೃತರಾಷ್ಟ್ರ ಭೂಪತಿ
ಸುತನ ಬಲವಂಕದಲಿ ಕನಕೋ
ಚಿತದ ಪೀಠದಲೆಸೆದನಾತನ ಬಲದ ಭಾಗದಲಿ
ಚತುರ ಚತುರಾನನರು ತರ್ಕ
ಶ್ರುತಿ ಸಮಸ್ತ ಕಳಾಸ್ವತಂತ್ರರು
ನುತಗುಣರು ನೃಪ ಸಭೆಯೊಳೆಸೆದರು ಭೂರಿ ಸಂದೋಹ ೩೧

ಮದವದತಿಬಲ ಶಕುನಿ ಸೈಂಧವ
ನದಟ ನೃಪ ಕಾಂಭೋಜ ರಥ ಸಂ
ಪದನು ಭೂರಿಶ್ರವ ಸುಲೋಚನ ವೀರ ವೃಷಸೇನ
ಕದನಕಾಲಾನಳರು ವರ ಹೇ
ಮದ ಮಕುಟ ರಚನೆಗಳಲೆಡವಂ
ಕದಲಿ ಕುಳ್ಳಿರ್ದರು ಮಹಾಯಾಸ್ಥಾನ ರಚನೆಯಲಿ ೩೨

ತರುಣ ಶೃಂಗಾರದ ಮಹಾ ಬಂ
ಧುರದ ನೂರ್ವರು ಕೌರವೇಂದ್ರನ
ವರ ಕುಮಾರರು ಮುಂದೆ ಮೆರೆದರು ಲಕ್ಷಣಾದಿಗಳು
ವರ ಕಿರೀಟದ ಕಾಲ ತೊಡರಿನ
ಕೊರಳ ಪದಕದ ಕೈಯ ಸುರಗಿಯ
ಲರಸನನುಜರು ನೂರ್ವರೆಡವಂಕದಲಿ ರಂಜಿಸಿತು ೩೩

ಮಿಸುಪ ತಮ್ಮ ಮುಖೇಂದುವನು ಸೈ
ರಿಸದ ಚಂದ್ರನ ಕಿತ್ತು ನಭದಲಿ
ಬಿಸುಟು ಬೇರ್ಗಳ ಹಿಡಿದರೋ ಹೇಳೆನಲು ಸಭೆಯೊಳಗೆ
ಶಶಿವದನೆಯರ ಕೈಯ ಸೀಗುರಿ
ವೆಸೆದವಿಕ್ಕೆಲದಲಿ ಸುಯೋಧನ
ವಸುಮತೀಶನ ವೈಭವದಲಾಸ್ಥಾನ ಚೆಲುವಾಯ್ತು ೩೪

ಕಲಹವಿಲ್ಲದೆ ನೂಲಿನೆಳೆಯಲಿ
ತಲೆಯನರಿವ ವಿರೋಧಿ ರಾಯರ
ನಳುಕಿಸುವ ಸಾಮದಲಿ ನಿಲಿಸುವ ನಿಖಿಳ ಭೂಭುಜರ
ಒಲಿದರೊಳಲಂಚದಲಿ ಭಿದ್ರಿಸಿ
ಕೊಲುವ ಮುನಿದೊಡೆ ಮಂತ್ರಶಕ್ತಿಯೊ
ಳಳುಕಿಸುವ ಮಂತ್ರಿಗಳು ಮೆರೆದರು ವಾಮಭಾಗದಲಿ ೩೫

ನಿಗಮ ತರ್ಕ ಪುರಾಣ ಕಾವ್ಯಾ
ದಿಗಳ ವಿಸಟಂಬರಿಗಳೊತ್ತೊ
ತ್ತುಗಳೊಳಿಟ್ಟೆಡೆಯಾಗಿ ಹಿಗ್ಗಿದ ಜಠರದಗ್ರಿಯರು
ಬಗೆಯುಪನ್ಯಾಸದ ಸುಶಾಖಾ
ಳಿಗಳ ಬೀಳಲು ಬೆಳೆದ ಗಡ್ಡದ
ವಿಗಡ ಭೂಯೋಪಾಧ್ಯರಿದ್ದುದು ರಾಜಸಭೆಯೊಳಗೆ ೩೬

ಸಲೆ ಸಮಸ್ಯದನಂತ ಪದ್ಯವ
ಘಳಿಲನನ್ವೈಸುವ ಸುಕಾಂತಿಯ
ಲಲಿತ ಮಧುರ ಸಮಾಧಿ ಸುಕುಮಾರಾದಿ ರಚನೆಯಲಿ
ಹಲವುಪಮೆ ಉತ್ಪ್ರೇಕ್ಷೆ ರೂಪಕ
ಸುಲಲಿತಾಲಂಕೃತಿ ಚಮತ್ಕೃತಿ
ಗಳ ಚತುರ್ಭಾಷಾ ವಿಶಾರದ ಕವಿಗಳೊಪ್ಪಿದರು ೩೭

ನುಡಿದು ತಲೆದೂಗಿಸುವ ಮರೆಗ
ನ್ನಡಕೆ ಹಾ ಹಾಯೆನಿಸಿ ಮೆಚ್ಚನು
ಪಡೆದ ವಾಗ್ಮಿಗಳೋದಿ ಹೊಗಳಿಸಿಕೊಂಬ ಗಮಕಿಗಳು
ಕೊಡುವ ಪದ್ಯಕೆ ಸುಪ್ರಮೇಯದ
ಗಡಣಕಬುಜಭವಾದಿ ವಿಭುಗಳು
ಬಿಡಿಸಲರಿದೆನಿಪತುಳ ತಾರ್ಕಿಕ ಜನಗಳೊಪ್ಪಿದರು ೩೮

ನುತ ಶುಭೋದಯ ಜೀಯ ಶತ್ರು
ಪ್ರತತಿ ಸಂಹಾರಕ ಸಮಸ್ತ
ಕ್ಷಿತಿಪತಿ ಬ್ರಹ್ಮಾಯುರಸ್ತುವೆನುತ್ತ ಕೈ ನೆಗಹಿ
ನುತಗುಣನ ಬಿರುದಾವಳಿಯ ಸಂ
ಗತಿಯನಭಿವರ್ಣಿಸುವ ಸಮಯೋ
ಚಿತದ ಮನ್ನಣೆವಡೆದು ಮೆರೆದುದು ಭಟ್ಟ ಸಂದೋಹ ೩೯

ಬರೆದ ಬಳಿಕದು ವಿಧಿಯ ಸೀಮೆಯ
ಬರಹ ನಿಜಕಾರ್ಯಾರ್ಥ ಲಾಭವು
ದೊರಕಿದೊಡೆ ಪತ್ರಿಯರ್ಥ ನೀರಲಿ ಬರೆದ ಲಿಪಿಯಂತೆ
ಕರಗುಪಿತ ಲೋಲುಪರು ಲಂಚದ
ಪರಮಜೀವನ ಜಾಣರಾ ಸಿರಿ
ಕರಣದವರೊಪ್ಪಿದರು ಭೂಪಾಲಕನ ಸಭೆಯೊಳಗೆ ೪೦

ನಳನ ನಹುಷನ ಶಾಲಿಹೋತ್ರನ
ಬಲುಮೆಗಳು ಕಿರಿದೆಂಬ ವಿದ್ಯಾ
ನಿಳಯ ವರ ರೇವಂತನೇರಾಟವನು ನಸುನಗುತ
ಬಲಿದ ದೃಢ ವಾಘೆಗಳು ದೃಷ್ಟಾ
ವಳಿಯ ಹಯ ಪೌಢ ಪ್ರತಾಪರು
ಹೊಳೆವ ಮಕುಟದ ಸಾಲುಗಳಲೊಪ್ಪಿದರು ರಾವುತರು ೪೧

ಅತಿಮದದಿ ತನು ಸೊಕ್ಕಿದೈರಾ
ವತವ ಕಿವಿವಿಡಿದೆಳೆವ ದಿಗ್ಗಜ
ತತಿಯನಮಲಾಂಕುಶದಲಂಜಿಸಿ ಕೆಲಬಲಕೆ ಬಿಡುವ
ನುತ ಗಜಾರೋಹಕರು ಕುರುಭೂ
ಪತಿಯ ಹೊರೆಯಲಿ ಮೆರೆದರಮರಾ
ವತಿಯ ರಾಯನ ಸಭೆಯೊಲೆಸೆದುದು ಕೌರವಾಸ್ಥಾನ ೪೨

ನಡೆದು ಪರಮಂಡಲದ ರಾಯರ
ಜಡಿದು ಕಪ್ಪವ ತಪ್ಪ ಶಿಪ್ಪರ
ಗಡಣವೆಸೆದುದು ಪವನ ವೇಗದ ರಾಯಭಾರಿಗಳು
ಕಡುಗಿದರೆ ಕಾಲಂಗೆ ಬಿರುದಿನ
ತೊಡರನಿಕ್ಕುವ ಜವನ ದಾಡೆಯ
ತುಡುಕುವಗ್ಗದ ವೀರರೆಸೆದುದು ದಿಟ್ಟವಾರೆಯಲಿ ೪೩

ಎಳೆಯ ಮಿಂಚಿನ ಕುಡಿಯ ಸೂಸುವ
ನಳಿನದೃಶೆಯರು ಶಶಿಯ ಬಿಂಬವ
ಹಳಿವ ಹುರುಡಿಸುವಬುಜಮುಖಿಯರು ಕೋಮಲಾಂಗಿಯರು
ಸೆಳೆನಡುವಿನಗ್ಗಳೆಯರೊಪ್ಪುವ
ಕಳಶಕುಚೆಯರು ಜಘನ ಚಳ
ದಳಕಿಯರು ಕುರುರಾಯನೆಡವಂಕದಲಿ ಮೋಹಿದರು ೪೪

ಮುರಿದು ನೋಡಿದರಖಿಳ ರಾಯರು
ಶಿರವ ಬಾಗಲು ಲಾಳ ಮಾಳವ
ತುರುಕ ಕೊಂಕಣ ಗೌಳ ಗೂರ್ಜರ ವಂಗ ಹಮ್ಮೀರ
ವರತ್ರಿಗರ್ತರು ನೆರೆದು ಜೀಯೆನು
ತಿರಲು ಕೋಮಲಿಕೆಯರು ಸಿತ ಚಾ
ಮರವ ಚಿಮ್ಮಲು ಭೂಪ ಮೆರೆದನು ಸಿಂಹಪೀಠದಲಿ ೪೫

ಆವ ದೇಸಿಯಿದಾವ ವಿಸ್ತರ
ವಾವ ದೇಶದ ಸಿರಿಯ ಸಡಗರ
ವಾವ ಪರಿಯ ವಿಳಾಸವಾವ ವಿಡಾಯಿ ತಾನೆನಲು
ಹಾವು ಹಳವಿಗೆಯಾದ ರಾಯನು
ರಾವಣಾರಿಯ ಕಾಣಿಕೆಗೆ ಬಲು
ಠೀವಿಯನು ತೋರಿದನು ಸಾರುವ ಭಟ್ಟರೋಳಿಯಲಿ ೪೬

ಬರಲಿ ಕರೆ ಕೈತವದ ಶಿಕ್ಷಾ
ಗುರುವನೆನುತವನೀಶ ದೂತರ
ಹರಿಯ ಬಿಟ್ಟನು ಹರಿಯ ನಿಳಯಕೆ ಹರಿಯ ವೇಗದಲಿ
ಚರರು ಹರಿತಂದಸುರ ರಿಪುವಿನ
ಚರಣದಲಿ ಮೈಯಿಕ್ಕಿ ನೊಸಲಲಿ
ಕರಪುಟಾಂಜಲಿ ಮೆರೆವುತಿರೆ ಬಿನ್ನಹವ ಮಾಡಿದರು ೪೭

ದೇವ ದೇವರ ಸಮಯವೆನೆ ರಾ
ಜೀವನಾಭನು ಮುಗುಳುನಗೆಯಲಿ
ಭಾವನವರಟ್ಟಿದರೆ ಹರ ಹರ ಬಹೆವು ನಡೆಯೆನುತ
ರಾವಣನ ಪರಿ ನೆಲೆಸಿತಿವನಲಿ
ಸಾವಿಗಂಜುವನಲ್ಲ ಖಳನು ನ
ಯಾವಿಳನು ನಮ್ಮುಕುತಿ ಕೊಳ್ಳದು ವಿದುರ ಕೇಳೆಂದ ೪೮

ಎನುತ ಮಂಚವನಿಳಿದು ವರ ಕಾಂ
ಚನ ವರೂಥಕೆ ಕೈಗೊಡುವ ಯದು
ಜನಪರುಗ್ಗಡಣೆಯಲಿ ಬಿಜಯಂಗೈದನಸುರಾರಿ
ಮುನಿ ನಿಕರ ಸಂದಣಿಸಿತಭ್ರದೊ
ಳನಿಮಿಷಾವಳಿ ನೆರೆದುದಿಭಪುರ
ಜನವೊಡನೆ ನಡೆತರಲು ಹರಿ ಬರುತಿರ್ದನೋಲಗಕೆ ೪೯

ಕಲಿಮಲದಿ ಪೊಲೆಗಲಸಿದಿಭಪುರಿ
ಯೊಳಗೆ ನಿರ್ಮಳವಾಯ್ತು ಕೃಷ್ಣನ
ಚೆಲುವ ದರುಶನದಿಂದ ಬೆಂದವು ಭವದ ಭಯಬೀಜ
ಲಲನೆಯರು ತಮತಮ್ಮ ನಯನಂ
ಗಳಿಗೆ ದೇವನ ತೆಗೆದು ಸನುಮತ
ಪುಳಕರಾದರು ಕೇಳು ಜನಮೇಜಯ ಮಹೀಪಾಲ ೫೦

ಕಂಜಸಂಭವ ಪಿತನು ಬಂದನು
ನಂಜಿನಲಿ ಪವಡಿಸುವ ಬಂದನು
ಕುಂಜರನ ಮೊರೆಗೇಳಿ ಸಲಹಿದ ದೇವನಿದೆ ಬಂದ
ಅಂಜನಾಸುತನೊಡೆಯ ಬಂದನು
ಅಂಜಿದಸುರನಿಗಭಯವಿತ್ತವ
ಭಂಜನೆಗೆ ಬಲುದೈವ ಬಂದನು ನೃಪತಿಯರಮನೆಗೆ ೫೧

ದೇವ ಬಂದನು ತನ್ನ ನೆನೆವರ
ಕಾವ ಬಂದನು ದೈತ್ಯಕುಲ ವನ
ದಾವ ಬಂದನು ಭಾಗವತಜನಲೋಲುಪನು ಬಂದ
ಭಾವಿಸುವಡಘಹಾರಿ ಬಂದನು
ಓವಿ ಬಂದರೆ ತನ್ನ ಬೀರುವ
ದೇವ ಬಂದನು ವೀರ ನರಯಣ ಬಂದನರಮನೆಗೆ ೫೨

ಅರಸ ಬಂದನು ಭಾಗವತಜನ
ಪರುಷ ಬಂದನು ಭಕ್ತ ವತ್ಸಲ
ಕರುಣಿ ಬಂದನು ತನ್ನ ನೆನೆದರೆ ಪರಮಪದವೀವ
ಪರಮಪುರುಷೋತ್ತಮನು ಬಂದನು
ದುರಿತದುರ್ಗ ವಿಭಾಡ ಬಂದನು
ಸುರರ ಸಲಹುವ ದೇವ ಬಂದನು ನೃಪತಿಯರಮನೆಗೆ ೫೩

ಕ್ಷೀರವಾರಿಧಿಶಯನ ಬಂದನು
ವಾರಿಜೋದರ ಕೃಷ್ಣ ಬಂದನು
ಧಾರುಣಿಯ ಹೊರೆಯಿಳಿಯಲೋಸುಗ ಮನುಜ ವೇಷದಲಿ
ಭೂರಿ ದನುಜರನೊರೆಸಿ ಕೌರವ
ವಾರಿಧಿಯ ಮುಕ್ಕುಳಿಸಲೋಸುಗ
ಭೋರನೈತರುತಿರ್ದನಂಧ ನೃಪಾಲನರಮನೆಗೆ ೫೪

ಬರಲು ಮುರಹರನಿದಿರುವಂದರು
ಗುರುನದೀಜ ದ್ರೋಣ ಗೌತಮ
ಗುರುಸುತಾದಿ ಸಮಸ್ತ ಭೂಪ ಚಮೂಹ ಸಂದೋಹ
ಚರಣದಲಿ ಚಾಚಿದರು ಭೂಮಿಾ
ಶ್ವರರು ಮಕುಟವನಂತತಾರಾ
ಪರಿವೃತೇಂದುವಿನಂತೆ ಮೆರೆದುದು ಹರಿಯ ಪದನಖವು ೫೫

ಅರಿದಲ್ಲೆ ಮುರವೈರಿ ಸನಕಾ
ದ್ಯರ ಸಮಾಧಿಗೆ ಸುಳಿಯದಂಘ್ರಿಯು
ದರುಶನದ ಫಲಭೋಗ ಸಾರಿದುದಸ್ಮದಾದ್ಯರಿಗೆ
ಸುರನರೋರಗರೊಳು ಕೃತಾರ್ಥರು
ನಿರುತ ತಾವಲ್ಲದೊಡೆ ನಿಮ್ಮಯ
ಸರಸಿಜಾಂಘ್ರಿಯ ಸೇವೆ ದೊರಕುವುದಾವ ಮುನಿಗಳಿಗೆ ೫೬

ಎಂದು ಗಂಗಾನಂದನನು ನಲ
ವಿಂದ ಕೈಗೊಡೆ ಸುರಗಿರಿಯ ತುದಿ
ಯಿಂದ ಮರಿಮಿಂಚುಗಳ ಮುಗಿಲಿಳಿವಂತೆ ಭೂತಳಕೆ
ಅಂದು ನೀಲಾಚಲ ನಿಕಾಯದ
ಸೌಂದರಾಂಗದ ಕೌಸ್ತುಭ ಪ್ರಭೆ
ಯಿಂದ ಕಾಂಚನ ರಥವನಿಳಿದನು ದಾನವಾರಾತಿ ೫೭

ಸಮರ ಸರ್ವಜ್ಞರುಗಳಂಘ್ರಿಗೆ
ನಮಿಸಿದರು ಬಹಳೋಲಗದ ಸಂ
ಭ್ರಮದ ಸಿರಿ ತಲೆವಾಗುತಿರ್ದುದು ನೊಸಲ ಕೈಗಳಲಿ
ಕಮಲನಯನದ ದೇವನೇ ಸಾ
ಕೆಮಗೆ ಮಾಡುವುದೇನೆನುತ ತ
ತ್ಕುಮತಿ ಕೌರವನಿಳಿಯದಿರ್ದನು ಸಿಂಹವಿಷ್ಟರವ ೫೮

ಸೆಣಸು ಸೇರದ ದೇವನಿದಿರಲಿ
ಮಣಿಯದಾತನ ಕಾಣುತವೆ ಧಾ
ರುಣಿಯನೊತ್ತಿದನಂಗುಟದ ತುದಿಯಿಂದ ನಸುನಗುತ
ಮಣಿಖಚಿತ ಕಾಂಚನದ ಪೀಠದ
ಗೊಣಸು ಮುರಿದುದು ಮೇಲೆ ಸುರ ಸಂ
ದಣಿಗಳಾ ಎನೆ ಕವಿದು ಬಿದ್ದನು ಹರಿಯ ಚರಣದಲಿ ೫೯

ಧರಣಿಪತಿ ಸಿಂಹಾಸನದ ಮೇ
ಲಿರದೆ ಬಹರೇ ನಾವು ಬಂದೇ
ಹರಸುವೆವು ತಪ್ಪಾವುದೆನುತೆತ್ತಿದನು ಮಸ್ತಕವ
ಸುರನದೀಸುತ ಕೈಗುಡಲು ಕೇ
ಸರಿಯ ಪೀಠಕೆ ದೇವ ಬಂದನು
ಕುರುಕುಲಾಗ್ರಣಿಗಳ ಸುಸನ್ಮಾನವನು ಕೈಕೊಳುತ ೬೦

ಹರಿಯ ಹರಿವಿಷ್ಟರದ ಬಲದಲಿ
ಧರಣಿಪತಿ ಕುಳ್ಳಿರ್ದನಾತನ
ಹಿರಿಯ ಮಗನೆಡವಂಕದಲಿ ಕರ್ಣಾದಿಗಳು ಸಹಿತ
ಹರಿಯ ನೇಮವ ಕೊಂಡು ಸನ್ಮುನಿ
ವರರು ಕುಳ್ಳಿರ್ದರು ನದೀಸುತ
ತರಿಸಿದನು ಪಡಿಗವನು ಹೊಂಗಳಸದ ಸುವಾರಿಗಳ ೬೧

ಚರಣಯುಗಳವ ತೊಳೆದು ತೀರ್ಥವ
ಶಿರದೊಳಿಟ್ಟು ಮಹಾನುಭಾವನ
ದರುಶನದಿ ಮಜ್ಜನ್ಮ ಸಫಲವೆನುತ್ತ ಕೈಮುಗಿದು
ಪರಶುರಾಮಾದಿಗಳ ವಿಂಗೆ ಸ
ತ್ಕರಿಸಿ ಗಂಧಾಕ್ಷತೆಗಳಿಂದುಪ
ಚರಿಸಿ ಹೊಂಬಟ್ಟಲಲಿ ವೀಳೆಯವಯವಿತ್ತನನಿಬರಿಗೆ ೬೨

ಕುಶಲವೇ ಕುರುರಾಯ ಬಾರೈ
ಮುಸುಡ ದುಗುಡವಿದೇಕೆ ಬಾಯೆಂ
ದಸುರರಿಪು ಕೌರವನ ಕರೆದನು ತನ್ನ ಸಮ್ಮುಖಕೆ
ಉಸುರಲಮ್ಮೆನು ಭಾವತನದೊಂ
ದೆಸಕ ಸಲುಗೆಯ ನೇಮವಾದೊಡೆ
ಬಿಸಜಲೋಚನ ಬಿನ್ನಹವನವಧರಿಸಬೇಕೆಂಬ ೬೩

ನೀವು ಬಿಜಯಂಗೈವಿರೆಂದು ಮ
ಹಾ ವಿಳಾಸದೊಳಳವಡಿಸಿ ನಾ
ನಾ ವಿಧದ ಷಡುರಸವ ಗರುಡಿಯಲಿಂದು ಸವೆಸಿದೆನು
ದೇವ ನಮ್ಮರಮನೆಗೆ ಬಾರದೆ
ನೀವು ವಿದುರನ ಮನೆಯಲುಂಡಿರಿ
ಗೋವಳಿಗತನ ನಿಮ್ಮ ಮೈ ಸಿರಿ ತಪ್ಪದಾಯ್ತೆಂದ ೬೪

ಈ ಕೃಪನನೀ ದ್ರೋಣನನೀ ಗಂ
ಗಾ ಕುಮಾರನ ಮನೆಯ ಹೊಗದವಿ
ವೇಕಿ ತೊತ್ತಿನ ಮಗನ ಮನೆಯಲಿ ಹಸಿವನೂಕಿದಿರಿ
ಸಾಕಿದಾತನು ನಂದಗೋಪನು
ಕಾಕ ಬಳಸಲು ಸಲ್ಲದೇ ನಿಮ
ಗೇಕೆ ರಾಯರ ನೀತಿಯೆಂದನು ನಗುತ ಕುರುರಾಯ ೬೫

ಕುರುಪತಿಯ ಬಿರುನುಡಿಯ ಕೇಳಿದು
ಕರಣದಲಿ ಕೋಪಾಗ್ನಿಯುಕ್ಕಲು
ಕೆರಳಿ ನಿರ್ಭೀತಿಯಲಿ ನುಡಿದನು ವಿದುರನರಸಂಗೆ
ದುರುಳ ನೀನಾಡಿದ ನುಡಿಗೆ ಉ
ತ್ತರವನೀಯಲದೇಕೆ ನಿನ್ನಯ
ವರ ಜನನಿಗಾದಿಯಲಿ ಗಂಡರದಾರು ಹೇಳೆಂದ ೬೬

ಕಡು ಮುಳಿಸಿನಲಿ ಭೀಮ ನಿನ್ನಯ
ತೊಡೆಗಳನು ಕಡಿವಾ ಸಮಯದೊಳು
ತಡೆದು ನಿನ್ನನು ಕಾಯಬೇಕೆಂದುಳುಹಿದೆನು ಧನುವ
ಕೆಡೆನುಡಿಸಿಕೊಂಡಿನ್ನು ಕಾವೆನೆ
ನುಡಿದು ಫಲವೇನೆನುತ ವಿದುರನು
ಹಿಡಿದ ಬಿಲ್ಲನು ಮುರಿದನಾ ಕುರುರಾಯ ಬೆರಗಾಗೆ ೬೭

ಧನು ಮುರಿಯೆ ಗಾಂಧಾರಿ ಗತ ಲೋ
ಚನರು ಮಮ್ಮಲ ಮರುಗಿದರು ಭೂ
ಪನ ದುಗುಡ ಮಿಗಿಲಾಯ್ತು ಭೀಷ್ಮ ದ್ರೋಣರಳಲಿದರು
ಮನದ ಹರುಷದಿ ನಗುತ ಮಧುಸೂ
ದನನು ನುಡಿದನು ಮರುಳು ಕೌರವ
ಜನಪ ಕೇಳೈ ಮತ್ತೆ ನಮ್ಮಯ ಶೀಲ ಬೇರೆಂದ ೬೮

ಪ್ರಿಯದಲುಂಬುದು ಮೇಣು ವಿಬುಧಾ
ಶ್ರಯದಲುಂಬುದು ಮಾನವರಿಗಿದು
ನಿಯತವಿಂತಲ್ಲದೊಡೆ ಕೇಳೈ ಕೌರವ ರಾಯ
ಪ್ರಿಯನು ನೀನಲ್ಲೆಮಗೆ ವಿಬುಧಾ
ಶ್ರಯವು ತಾ ಮುನ್ನಿಲ್ಲ ನಿನ್ನಾ
ಲಯದಲೆಮಗೆಂತೂಟ ಸಂಭವಿಸುವುದು ಹೇಳೆಂದ ೬೯

ಹಗೆಯನೊಳಗಿಡಲಾಗದದು ವೈ
ರಿಗಳ ನಿಳಯದಲನ್ನ ಪಾನಾ
ದಿನಗಳನುಣಲಾಗದು ನಿಧಾನಿಸೆ ರಾಜನೀತಿಯಿದು
ಬಗೆಯೆ ನೀ ಪಾಂಡವರಿಗಹಿತನು
ವಿಗಡ ಪಾಂಡವರೆನ್ನ ಜೀವನ
ಹಗೆಯ ನಂಬುವೆನೆಂತು ಹೇಳೈ ಕೌರವರ ರಾಯ ೭೦

ಸೇರುವನು ಸಕಳಂಕ ಚಂದ್ರನು
ವಾರಿಧಿಗೆ ನೀನಖಿಳ ಗೋಪೀ
ಜಾರ ಜಾರೆಯ ಮಕ್ಕಳಿಗೆ ನೀ ಜೀವ ತಪ್ಪೇನು
ಆರು ತಮ್ಮಂದದ ಮಹಾತ್ಮರ
ಸೇರುವರಲ್ಲೈ ಪಾಂಡುಪುತ್ರರ
ಕೂರುಮೆಗೆ ನಾನೆನ್ನೆ ನೀ ಬಂದನುವ ಹೇಳೆಂದ ೭೧

ಕುಲದವನ ಹೃದಯಾಂಧಕಾರವ
ಕಳಚಲೆಂದು ಹಿಮಾಂಶು ಹರಹಿದ
ನೆಳೆಯಬೆಳುದಿಂಗಳನೆನಲು ಸುರರಿಪುಕುಲಾಂತಕನು
ತೊಳಪ ದಶನಮಯೂಖ ತತಿ ಹೊಳೆ
ಹೊಳೆಯೆ ನುಡಿದನು ತತ್ಸಭಾ ಮಂ
ಡಲ ಮಹಾಂಬುಧಿ ನುಡಿದೆರೆಯ ತನಿಗಡಣವಡಗಿರಲು ೭೨

ಒಂಬತ್ತನೆಯ ಸಂಧಿ

ಸೂ. ಬಿಡು ನೆಲನ ಕೇಡುಗರ ಮಾತಿಂ
ಗೊಡಬಡದಿರಂತಕನ ನಗರಿಗೆ
ನಡೆಯಬೇಡೆಂದಸುರರಿಪು ಕೌರವನನುರೆ ಜರೆದ .

ಅವಧಿ ಸವೆದುದು ಪಾಂಡವರು ನಿ
ನ್ನವರು ವನವಾಸ ಪ್ರವಾಸದೊ
ಳವರು ನವೆದರು ಕೂಡಿಕೊಂಡಿಹುದಧಿಕ ಗುಣ ನಿನಗೆ
ಅವನಿಯರ್ಧವನೀವುದೀಯ
ಧ್ರುವದ ಬಾಳಿಕೆಯೊಳಗೆ ಪುರುಷಾ
ರ್ಥವನು ಸಂಚಿಸೆ ಕಲಿಯಬೇಹುದು ಭೂಪ ಕೇಳೆಂದ ೧

ಅರಸುತನ ತನಗಧಿಕವಾಗುತ
ಬರಬರಲು ಕಣ್ಣಾಲಿಗಳು ತರ
ಹರಿಸಿ ಕಾಣವು ವರ್ತಮಾನದ ನೃಪರ ಬಳಕೆಯಿದು
ಸಿರಿಯ ಮದವೆಂಬಧಿಕ ತಾಮಸ
ದೊರಕಿದಕ್ಷಿಗೆ ನೀತಿಕಾರರ
ಪರಮವಚನಾಂಜನದಿ ಪ್ರಜ್ವಲಿಸುವುದು ನಯವೆಂದ ೨

ಕೋಶ ಬಲ ತಳತಂತ್ರ ಹೆಚ್ಚಿದ
ದೇಶ ದುರ್ಗವಮಾತ್ಯ ಮಿತ್ರ ಮ
ಹೀಶ ಜನವೆಂಬುದು ಕಣಾ ಸಪ್ತಾಂಗ ಸನ್ನಾಹ
ಈಸು ನಿನಗುಂಟಿಲ್ಲಿ ಮಿತ್ರಮ
ಹೀಶರೆಂಬುದ ತೊರೆವೆ ಪಾಂಡವ
ರಾ ಸಹಾಯವು ಬರಲು ನಿನಗಿದಿರಿಲ್ಲ ಕೇಳೆಂದ ೩

ಹೇಳಿದೀ ಸಪ್ತಾಂಗದೊಳಗೊಂ
ದೇಳಿ ದಿಟವಾಗಿರ್ದ ನೃಪತಿಯ
ಬಾಳಿಕೆಗೆ ಸಂದೇಹವರಿಯಾ ರಾಜನೀತಿಗಳ
ಹೇಳಲಮ್ಮುವರಿಲ್ಲ ಹಿರಿಯರು
ಹೇಳಿದೊಡೆ ನೀ ಕೇಳೆ ಕುರುಕುಲ
ಮೌಳಿ ನಯದಲಿ ನಡೆಯಕಟಯೆಂದಸುರರಿಪು ನುಡಿದ ೪

ಸಾಮವೆಂಬುದು ರಾಜನೀತಿಗೆ
ತಾ ಮನೋಹರ ರೂಪು ಬದುಕುವ
ಭೂಮಿಪಾಲರನಂತ ವಿಭವಕೆ ಬೀಜ ಮಂತ್ರವಿದು
ಸಾಮ ತಪ್ಪಿದ ಬಳಿಕ ನೀತಿ ವಿ
ರಾಮವಾಗದೆ ಬಿಡದು ದಂಡದ
ಸೀಮೆಯೆಂಬುದುಪಾಯದಲಿ ಸಾಮಾನ್ಯ ತರವೆಂದ ೫

ಮಾಡಿದಪರಾಧಂಗಳನು ಮರೆ
ದಾಡರತಿ ಮೋಹದಲಿ ದಿಟ ನೀ
ಗೂಡಿ ಬದುಕುವ ನುಡಿಯ ನುಡಿವರು ನಮ್ಮ ಮನ ಮೆಚ್ಚೆ
ಕಾಡಿನೊಳಗಾಡಿದರು ದುಃಖವ
ತೋಡಿದರು ನೀನವರಿಗುಚಿತವ
ಮಾಡಿ ನಾಡನು ಕೊಡುವುದೆಂದನು ದಾನವಧ್ವಂಸಿ ೬

ವಿದುರನುತ್ಸವ ಕೃಪನ ಸಮ್ಮದ
ನದಿಯ ಮಗನೊಲವಂಥ ನೃಪನ
ಭ್ಯುದಯ ಕೇಳೆಂದಸುರರಿಪು ನಯನುಡಿಯ ಗ್ರಡಣಿಸಲು
ಮದದ ಮೈಗಾಣಿಕೆಯ ಮನ ಲೇ
ಪದ ಮಹಾ ಖಳನಡ್ಡ ಮೊಗವಿಡ
ಲುದಧಿಯೊಳಗದ್ದಂತೆಯಿರ್ದುದು ರಾಯನಾಸ್ಥಾನ ೭

ಅವರಿಗಿಂದ್ರಪ್ರಸ್ಥದಲಿ ರಾ
ಜ್ಯವನು ಕುಳಸಹಿತಿತ್ತು ನೀ ಪಾಂ
ಡವ ಪ್ರತಿಷ್ಠಾಚಾರ್ಯನೆಂಬೀ ಬಿರುದ ಸಲಿಸಿದೊಡೆ
ಅವನಿಯಲಿ ನಿನ್ನೊಡನೆ ತಲೆಯೆ
ತ್ತುವ ನೃಪಾಲಕರಿಲ್ಲ ನುಡಿಗಳು
ಕಿವಿಗೆ ಕರ್ಕಶವೀಗಲಾದೊಡೆ ಮುಂದೆ ಲೇಸೆಂದ ೮

ಕಳಕಳಿಕೆ ತಗ್ಗಿದ ಸಭಾ ಸ್ಥಳ
ದೊಳಗೆ ಸಿಂಹಧ್ವನಿಯಲವನಿಪ
ಕುಲಕುಠಾರನು ಪರಶುರಾಮನು ನುಡಿದನರಸಂಗೆ
ಎಲೆ ಸುಯೋಧನ ಕೃಷ್ಣರಾಯನ
ಅಳಲಿಸುವರೇ ಲೋಭವೀ ವೆ
ಗ್ಗಳದ ನಿರ್ಬಂಧನವು ಪ್ರಾಜ್ಞರಿಗುಚಿತವಲ್ಲೆಂದ ೯

ದಿವಿಜರಿದಿರಲ್ಲೆಂದು ಡಂಭೋ
ದ್ಭವನು ನರ ನಾರಾಯಣಾಖ್ಯರ
ನವಗಡಿಸಿ ಮುರಿವಡೆದು ಕೆಟ್ಟನು ಗಾಢಗರ್ವದಲಿ
ಅವರೊಳರ್ಜುನ ನರನು ಯದು ಸಂ
ಭವನು ನಾರಾಯಣನು ಬಿಡು ಪಾಂ
ಡವರ ವೈರವನೆಂದು ಭಾರ್ಗವ ನುಡಿದನರಸಂಗೆ ೧೦

ತಪ್ಪಿ ನುಡಿಯನು ಪರಶುರಾಮನು
ದರ್ಪವಿದು ಲೇಸಲ್ಲ ಕ ಷ ಂ
ಗೊಪ್ಪಿಸುವುದರ್ಧಾವನೀತಳವನು ಸರಾಗದಲಿ
ತಪ್ಪಿ ನುಡಿದೊಡೆ ಗರುಡ ದೇವನ
ದರ್ಪವನು ಹರಿ ಸೆಳೆದು ಬಿಸುಟನು
ಒಪ್ಪಿ ತಾಗದಿರೆಂದು ನುಡಿದನು ಕಣ್ವಮುನಿ ನಗುತ ೧೧

ಅಹುದು ಕಣ್ವನ ಮಾತು ಕೃಷ್ಣನ
ಮಹಿಮೆ ಘನವಿದನರಿದು ಗರ್ವ
ಗ್ರಹ ಹಿಡಿದು ಮರುಳಾಗದಿರು ಮುನ್ನೊಬ್ಬ ಗಾವಿಲನು
ಬಹಳ ಗುರುದಕ್ಷಿಣೆಗೆ ತೊಳಲಿದು
ಮಹಿಯೊಳೆಲ್ಲಿಯು ಗಳಿಸದಿರಲವ
ನಹವ ಮುರಿದನು ಬಳಿಕ ವಿಶ್ವಾಮಿತ್ರ ಮುನಿ ಬಂದು ೧೨

ನಿಮ್ಮ ಪೂರ್ವ ಯಯಾತಿ ನಾಕದೊ
ಳೆಮ್ಮವೋಲಾರುಂಟು ಜಗದಲಿ
ಧರ್ಮಪರನೆನೆ ಸುರರು ಹರಿದಿಕ್ಕಿದರು ಹೆಡತಲೆಗೆ
ಧರ್ಮಪಥ ಹುಲುವಟ್ಟೆಯೆನಿಸಿದೆ
ಹಮ್ಮಿನಲಿ ಕೆಡಬೇಡ ನೀತಿಯ
ನೆಮ್ಮಿದನು ಕೆಡನೆಂದು ನಾರದ ನುಡಿದನರಸಂಗೆ ೧೩

ಅವನಿಪತಿ ಕೇಳಾವು ಪಾಂಡವ
ರವರು ಬನದಲಿ ಕಂದ ಮೂಲವ
ಸವಿದು ಕೊಂಬರು ಋಷಿಗಳಿಗೆ ಹಂಗೇಕೆ ಭೂಮಿಪರ
ಇವರದಾವನ ಪಕ್ಷಪಾತ
ವ್ಯವಹರಣೆಯವರಲ್ಲ ಕೇಳಿ
ನ್ನಿವರ ನುಡಿಗಳನೆಂದು ನುಡಿದನು ಮತ್ತೆ ಮುರವೈರಿ ೧೪

ಬೆರಳ ಮೀಸೆಯೊಳಿಡುತ ಕಿರು ನಗೆ
ವೆರಸಿ ಕರ್ಣಾದಿಗಳ ವದನವ
ತಿರುಗಿ ನೋಡುತ ಹರಿಯ ನುಡಿಗಳ ಕಿವುಡುಗೇಳುತ್ತ
ಮರುಳತನದಾಲಾಪವೇತಕೆ
ಮುರಹರನೆ ಪಾಂಡವರ ಹಂಬಲ
ಮರೆದು ಕಳೆ ಕರಣಕ್ಕೆ ಖಾತಿಯ ಬಳಸಬೇಡೆಂದ ೧೫

ಅವರು ನಮ್ಮೊಳು ಸರಸವಾಡುವ
ಹವಣದಲ್ಲದೆ ರಾಜ ಕಾರ್ಯವ
ನೆವಗೆ ಯೋಚಿಸಿ ಕಳುಹಿದಂದವ ಮೆಚ್ಚೆ ನಾನಿದನು
ಬವರ ಬೇಕೇ ಬೇಡಿ ಕೊಂಬುದು
ಅವನಿಗಿವನಿಯ ಮಾತ ನೀನಾ
ಡುವರೆ ಪಾಂಡವರೇಕೆ ನೀವೇಕೆಂದು ಖಳ ನುಡಿದ ೧೬

ಮಾವ ಮೊದಲು ಸಹಾಯ ಮಧ್ಯದೊ
ಳಾ ವಿರಾಟನ ಸಖ್ಯ ಕಡೆಯಲಿ
ನೀವು ಮಮ ಪ್ರಾಣಾಹಿಯೆಂಬಿರಿ ನಿಮ್ಮ ಪಾಂಡವರ
ನಾವು ಕಡೆಯಲಿ ಹೊರಗು ನಮಗಿ
ನ್ನಾವ ಭೂಪರ ಸಖ್ಯವಿದ್ದುದು
ದೇವ ನಾಚಿಸಬೇಡ ಸಂಧಿಯ ಮಾತ ಮರೆಯೆಂದ ೧೭

ಮಾಡು ಸಂಧಿಯನೆಮ್ಮ ವಚನಕೆ
ಕೋಡದಿರು ಸವಿವಾತುಗಳ ನಿನ
ಗಾಡುವವರಿಗೆ ಚಿತ್ತಗೊಡದಿರು ಪಿಸುಣ ಹೊಗಿಸದಿರು
ನಾಡನಾಲಗೆ ಗೆಳೆಯರೆಂಬುದ
ಮಾಡದಿರು ಪಾಂಡವ ನೃಪಾಲರ
ಕೂಡುವಾಳಿಕೆ ಪಥ್ಯ ಕೇಳೆಂದಸುರರಿಪು ನುಡಿದ ೧೮

ನೀತಿಗಾಲಯ ನಿಮ್ಮ ಕುಲ ವಿ
ಖ್ಯಾತವದು ನೆಲೆ ಸಕಲ ಸೌಖ್ಯ
ವ್ರಾತಕಿದು ಸದ್ಬೀಜವೆನಿಸಿತು ಕೌರವಾನ್ವಯವು
ಭೂತಳದ ಲೋಲುಪತೆಯೊಳು ಕುಲ
ಘಾತಕನು ನೀನೆಂಬ ಕೀರ್ತಿಗೆ
ಯೋತು ನೆಲೆಯಾಗದಿರು ಬೇಡಿದೆವೆಂದು ಹರಿ ನುಡಿದ ೧೯

ಧರೆಯ ನೃಪರಿಗೆ ಹಸ್ತಿನಾಪುರ
ದರಮನೆಯ ಬಾಗಿಲಲಿ ಸಮಯವು
ದೊರಕಲಂತದು ಪುಣ್ಯವೆಂಬೀ ಸಾರ್ವಭೌಮತೆಯು
ಸಿರಿಗೆ ಪಾಂಡವರನ್ಯರಾದೊಡೆ
ಮೆರೆಯಲರಿವುದೆ ನಿಮ್ಮ ಸಿರಿ ಕಾ
ತರಿಗತನವನು ಮಾಣು ಕೇಳೆಂದಸುರರಿಪು ನುಡಿದ ೨೦

ಯಮಜ ನಿನಗೊಳ್ಳಿದನು ಪಾರ್ಥನ
ಮಮತೆ ನಿನ್ನಲಿ ಹಿರಿದು ಭೀಮನ
ತಮದ ನುಡಿ ಹಿಂಗಿದವು ನಕುಲನು ನಿನ್ನೊಳೆರಡರಿಯ
ತಮತಮಗೆ ತಮ್ಮೈವರೂ ನಿ
ನ್ನಮಲ ವಚನವ ಹಾರಿಹರು ಉ
ಭ್ರಮಿತತನವನು ಮಾಡದಿರು ಸೋದರರ ಸಲಹೆಂದ ೨೧

ಧರ್ಮಜನ ಕಡು ಮೋಹವೆಂಬುದು
ನಿಮ್ಮ ಚಿತ್ತದೊಳಿರಲಿ ಭೀಮನ
ಹಮ್ಮು ತಮ್ಮೊಳಗಿರಲಿ ಫಲುಗುಣನೊಲವದಂತಿರಲಿ
ನಮ್ಮ ಭೂಮಿಯೊಳರೆಯ ಬೇಡುವ
ರೆಮ್ಮ ಬಂಧುಗಳಲ್ಲ ಸಂಧಿಗೆ
ತಮ್ಮನೊಡಬಡನೆಂದು ದುಶ್ಶಾಸನನ ನೋಡಿದನು ೨೨

ಬಂಧುಕೃತ್ಯದ ಮಾತು ಸೂರ್ಯಾಂ
ಗಂಧಕಾರವು ಸೇರುವುದೆ ನಿ
ರ್ಬಂಧದಲಿ ನೀವೇಕೆ ನುಡಿವಿರಿ ರಾಜ ಕಾರಿಯವ
ಸಂಧಿಯಾಗದು ಪಾಂಡವರ ಸಂ
ಬಂಧ ನಮಗೇಕೆನುತ ಕರುಣಾ
ಸಿಂಧುವಿನ ಮೊಗ ನೋಡಿ ದುಶ್ಶಾಸನನು ಗರ್ಜಿಸಿದ ೨೩

ಕೆಡಿಸದಿರು ಧೃತರಾಷ್ಟ್ರ ಕುಲದಲಿ
ಕೊಡಲಿಯನು ನೀ ಹಡೆದು ವಂಶವ
ಕೆಡಿಸಿ ಕಳೆದೊಡೆ ಹಾನಿ ವೃದ್ಧಿಗಳೆಲ್ಲ ನಿನಗಹುದು
ನುಡಿಗೆ ಸಮುಮತರಾಗಿ ತಾ ಕುಲ
ಗಡಿಯನಿವ ಮುಂದರಿಯ ನೀವಿಂ
ತೊಡಬಡಿಸಿ ಪಾಂಡವರ ಸ್ವಾಮ್ಯವನೀಸಿ ಕೊಡಿಯೆಂದ ೨೪

ಈ ಹರಿಯ ನುಡಿಗೇಳು ದೈವದ
ಮೋಹ ತಪ್ಪಿದ ಬಳಿಕ ಸುಭಟರ
ಸಾಹಸಿಕೆ ಹುರುಳಿಲ್ಲ ನಂಬದಿರೆಮ್ಮ ಬಲುಹುಗಳ
ಬಾಹಿರವ ನೀನಾಡದಿರು ವೈ
ದೇಹಿಯನು ಸೆರೆವೊಯ್ದ ಸ್ವಾಮಿ
ದ್ರೋಹಿಯನು ಹೋಲದಿರು ಕೌರವಯೆಂದನಾ ಭೀಷ್ಮ ೨೫

ನೆಲನ ಬೇಡುವ ಪಾಂಡವರ ಭುಜ
ಬಲದೊಳಗೆ ಕುಂದಿಲ್ಲ ನೀತಿಯ
ತಿಳುಹಲೈತಂದಸುರರಿಪು ಸಾಮಾನ್ಯ ಬಳನಲ್ಲ
ಇಳೆಯೊಳರ್ಧವನೊಪ್ಪುಗೊಡು ಯದು
ಕುಲ ಲಲಾಮನ ನೇಮವನು ನೀ
ಸಲಿಸು ಕೆಡಿಸದಿರೀ ವಿಳಾಸವನೆಂದನಾ ದ್ರೋಣ ೨೬

ಹಲವು ಹೊಲ್ಲೆಹಗಳನು ಪಾಂಡವ
ರೊಳಗೆ ನೆನೆದೆನು ಮುಚ್ಚು ಮರೆಯೇ
ನಿಳೆಯ ಲೋಭದ ಬಗೆಗೆ ನೆಗಳಿದೆ ರಾಜಕಾರಿಯವ
ನೆಲನ ಕೊಂಡೆನು ಜೂಜುಗಾರರ
ವಿಲಗದಲಿ ಪಾಂಡವರ್ಗೆ ಪುನರಪಿ
ಹಳುವವೇ ಶರಣಲ್ಲದಿಲ್ಲೆಲೆ ಕೃಷ್ಣ ಕೇಳೆಂದ ೨೭

ತಾಗುವಪಕೀರತಿಗೆ ಹೇಸುವ
ರಾಗಿ ಸತ್ಯವನುಳುಹಿ ಹಳುವವ
ಭೋಗಿಸಿದೊಡದು ಕುಲಕೆ ಕುಂದೇ ಪಾಂಡು ತನಯರಿಗೆ
ನೀಗಿದರು ವನವಾಸವನು ಸರಿ
ಭಾಗದವನಿಯ ಕೊಂಬ ಛಲವನು
ಹೋಗ ಬಿಡುವನೆ ಭೀಮನೆಂದನು ನಗುತ ಮುರವೈರಿ ೨೮

ಕೊಡು ವೃಕಸ್ಥಳವನು ಕುಶಸ್ಥಳ
ಪೊಡವಿಯಾವಂತಿಯನು ಕುಳವನು
ಕೊಡಿಸಿ ಕಳೆ ಸಿರಿಕರಣದವರಲಿ ವಾರಣಾವತವ
ಕೊಡು ನಿನಗೆ ಮನ ಬಂದುದೊಂದನು
ನಡೆಸಿ ಕೊಡುವೆನು ಪಾಂಡವರನವ
ಗಡೆಯುತನ ಬೇಡಿನ್ನು ಕೇಳೆಂದಸುರರಿಪು ನುಡಿದ ೨೯

ಪರಮಪುರುಷನು ಕೃಷ್ಣರಾಯನು
ಕುರುಕುಲದ ಹಿರಿಯನು ನದೀಸುತ
ಪರಮಧನಸಮಚಾಪವಿದ್ಯನು ದ್ರೋಣನವರಿಂದ
ಧರಣಿಪತಿ ಬಲುಹಂಳ್ಳವರು ನಿ
ನ್ನರಮನೆಯಲುಂಟೇ ವಿಚಾರಿಸು
ಮರುಳತನ ಬೇಡಿವರ ನುಡಿಗೇಳೆಂದನಾ ವಿದುರ ೩೦

ಬೇಡಿದೊಂದೊಂದೂರು ನಮ್ಮಯ
ನಾಡ ತಲೆಮಂಡೆಗಳು ರಾಜ್ಯದ
ರೂಢಿ ಐದೂರುಗಳ ಬಳವಿಗೆ ಹಸ್ತಿನಾ ನಗರ
ಬೇಡಲರಿವನು ಮಾನನಿಧಿ ಕೊಂ
ಡಾಡಲೇತಕೆ ಧರೆಯನೀರಡಿ
ಮಾಡಿಕೊಂಡ ಮಹಾತ್ಮ ನಿನಗಂಜುವೆನು ನಾನೆಂದ ೩೧

ಕರೆದು ಮೂರಡಿ ನೆಲನ ಧಾರೆಯ
ನೆರೆದ ಬಲಿ ತಳಕಿಳಿದನೆನ್ನೀ
ಧರೆಯೊಳೈದೂರುಗಳನಿತ್ತನಗಾವ ಪದವಹುದು
ಪರಮಪುರುಷನು ನೀನು ನಿನಗಾ
ಶರಣು ಹೊಕ್ಕೆನು ಬಂದ ಪಥದಲಿ
ಮರಳಿ ಬಿಜಯಂಗೈವುದೆಂದನು ನಗುತ ಕುರುರಾಯ ೩೨

ಸಲಲಿ ನೀ ಪಾಂಡವರೊಳೆತ್ತಿದ
ಛಲದ ಬಳವಿಗೆಯಕಟ ನಿಮ್ಮಯ
ಬಳಗ ಬದುಕಲಿ ಮತ್ತೆ ನವೆಯಲಿ ಧರ್ಮನಂದನನು
ಜಲಧಿ ಮೇರೆಯ ಮಹಿಯಳೊಂದೇ
ಸ್ಥಳವನೈವರಿಗೀವುದೆನೆ ಕಳ
ವಳಿಗನವಗಡಿಸಿದನು ಜಡಿದನು ದನುಜವೈರಿಯನು ೩೩

ನೆಲದೊಳರ್ಧವನೀವುದಿಲ್ಲಾ
ಸ್ಥಳವನೈದನು ಮುನ್ನ ಕೊಡೆನೆ
ನ್ನಿಳೆಯ ಭಾಗವನೀಸಕೊಟ್ಟಡೆ ನಿನ್ನ ಮೇಲಾಣೆ
ನೆಲನ ಕಡೆಯಲಿ ಮುಳ್ಳುಮೊನೆಯು
ಚ್ಚಳಿಪ ಧರಣಿಯನಿತ್ತೆನಾದೊಡೆ
ಬಳಿಕ ನೀ ನಗು ಹೋಗು ಕದನವ ಕೊಂಡು ಬಾಯೆಂದ ೩೪

ದನವ ಕಾದುದು ತೀರ್ದುದೇ ಬನ
ಬನಕೆ ತೊಳಲ್ವುದು ಕಡೆಯನೈದಿತೆ
ಮುನಿಗಳೊಳು ಬೊಗಳುಗಳನೆರಗಿಸಿ ಕೊಂಬುದದ ಬಿಸುಟು
ವನನಿಧಿಯನೆಡೆಗೊಂಡು ನಡು ಹಾ
ವಿನಲಿ ಹಕ್ಕೆಯ ಬಿಸುಟು ನಮ್ಮೊಳು
ಮನಕತವ ನೀ ತಿಳುಹಲೋಸುಗ ಬಹರೆ ಹೇಳೆಂದ ೩೫

ಖತಿಯ ಹಿಡಿದನು ಶೌರಿ ಮಣಿಯದ
ಮತಗುಡದ ಫಣಿಕೇತನನ ಕಂ
ಡತುಲಬಲ ಗುರು ಸಿಂಧುತನಯಾದಿಗಳ ಮೊಗ ನೋಡಿ
ವ್ಯತಿಕರವನಿವ ಬಯಸಿ ಮಿಗೆ ಬೇ
ಡುತಿರೆ ಕದನವ ನೆನೆಯೆ ಭೂಪನ
ಸತಿಯ ಕಿವಿಯೊಳಗೋಲೆಯಸ್ಥಿರವರಿವೆ ತಾನೆಂದ ೩೬

ಕಡೆಗೆ ಧೃತರಾಷ್ಟ್ರಾವನೀಶನು
ಮಡದಿ ಸಹಿತಲನಾಥನಾಗಿಯೆ
ಕೆಡುವನೆಂಬುದ ಬಲ್ಲೆನಾ ಪಾಂಡವರ ರಾಜ್ಯದಲಿ
ಪಡಿಗೆ ಪವಮಾನಜನ ಸಮಯುವ
ಹಡೆಯುದಿಹ ತರುವಾಯಲೀತನು
ನಡೆಸಿ ಕೊಡುವನು ತಪ್ಪದಕಟೆಂದನಾ ವಿದುರ ೩೭

ಮನದ ಸಂಕೇತದಲಿ ದುರಿಯೋ
ಧನನ ಕಟ್ಟಲು ವಿದುರ ಗಂಗಾ
ತನಯ ಧೃತರಾಷ್ಟ್ರಾವನಿಪರಾಳೋಚಿಸಿದ ಹದನ
ಮನದೊಳರಿದನು ಬಳಿಕ ದುಶ್ಶಾ
ಸನನು ದುರಿಯೋಧನಗೆಯಿನಿಬರ
ನೆನಹ ಬಿನ್ನಹ ಮಾಡಿದನು ಖಾತಿಯಲಿ ಕಳವಳಿಸಿ ೩೮

ಹೆತ್ತವರು ಮರುಳಹರೆ ನಾವಿ
ನ್ನೆತ್ತ ತಿರುಗುವೆವಣ್ಣ ದೇವರೆ
ಚಿತ್ತವಿಸಿದಿರೆ ರಾಜಕಾರ್ಯದ ಹದ ವಿಸಂಚಿಸಿತು
ಮುತ್ತಯನ ಕಿರಿಯಯ್ಯನಯ್ಯನ
ಚಿತ್ತ ಕೊಂಕಿತು ಸಾಕು ನಿಂದೆಗೆ
ನುತ್ತಲಗ್ರಜ ಸಹಿತಲೋಲಗದಿಂದ ಹೊರವಂಟ ೩೯

ಮುನಿದು ದುರಿಯೋಧನನು ದುಶ್ಶಾ
ಸನನು ಕೆಲದರಮನೆಯೊಳಾಳೋ
ಚನೆಯ ಮಾಡಿದರಂದು ಸೌಬಲ ಕರ್ಣರೊಡಗೂಡಿ
ದನುಜವೈರಿ ಕುಮಂತ್ರದಲಿ ಬೊ
ಪ್ಪನೊಳು ಖಾತಿಯನಿಕ್ಕಿದನು ಕೈ
ಮನದ ಕಲಿಗಳು ಕಟ್ಟಿ ಕೃಷ್ಣನನೆಂದು ಗಜಬಜಿಸೆ ೪೦

ಎರಡು ಬಲವನು ಮಸೆದು ಕೊಲಿಸುವ
ಭರವೆ ಯಾದವನದು ನಿಧಾನಿಸ
ಲರಿ ನಮಗೆ ಮುರವೈರಿಯಲ್ಲದೆ ಪಾಂಡು ನಂದನರೆ
ತರಿಸಿ ಹುರಿ ನೇಣುಗಳನೀತನ
ಕರವೆರಡನೊಡೆಬಿಗಿದಡವದಿರು
ಕೆರಳಿ ಮಾಡುವುದಾವುದೆಂದನು ಕೌರವರ ರಾಯ ೪೧

ಗಾಳಿಯುಪಶಮಿಸಿದೊಡೆ ವಹ್ನಿ
ಜ್ವಾಲೆ ತಾನೇ ನಿಲುವುದೀತನ
ತೋಳ ಬಿಗಿದೊಡೆ ಬಳಿಕ ಮನಗುಂದುವರು ಪಾಂಡವರು
ಮೇಳವಿಸಿ ನೇಣುಗಳನೆನುತ ನೃ
ಪಾಲನವದಿರು ಗಜಬಜಿಸುವುದ
ನಾಲಿಸುತ ಸಾತ್ಯಕಿಯೊಡನೆ ಕೃತವರ್ಮನರುಹಿದನು ೪೨

ಆಳು ಕುದುರೆಯ ಬಾಗಿಲಿಗೆ ಬರ
ಹೇಳು ಕೈದುವ ಕೊಂಡು ವೀರ ಭ
ಟಾಳಿ ಹತ್ತಿರೆ ನಿಲಲಿ ಕೈವೀಸಿದರೆ ಕವಿಕವಿದು
ಬೀಳ ಬಡಿವುದು ಹೊಕ್ಕು ದಂಡಿನ
ಮೇಲೆ ದಂಡನು ಕಡಿದು ಕುರು ಭೂ
ಪಾಲಕನ ನೊರೆ ನೆತ್ತರಲಿ ನಾದುವುದು ಮೇದಿನಿಯ ೪೩

ಎಂದು ಸುಭಟರಿಗರುಹಿ ಸಾತ್ಯಕಿ
ಬಂದು ಕೃಷ್ಣನ ಕಿವಿಯ ಹತ್ತಿರೆ
ನಿಂದು ವದನವ ಚಾಚಿ ಬಿನ್ನಹ ಮಾಡಿದನು ನಗುತ
ಮಂದಮತಿಗಳು ತಪ್ಪಿದರು ಮನ
ಗುಂದಲಾಗದು ಜೀಯ ಚಿತ್ತೈ
ಸೆಂದಡಸುರಾರಾತಿ ನಗುತವೆ ಭೀಷ್ಮಗಿರೆಂದ ೪೪

ಪರಿಣತ ಪ್ರೌಢಿಗಳಿಗಂತಃ
ಕರಣ ನನೆವುದು ಸುಜನರಿಗೆ ನಿ
ಷ್ಠುರತೆಗಲ್ಲದೆ ಮನವನೀಯದು ಮಹಿಯ ಮೂಢಜನ
ಕರಗುವುದು ಶಶಿಕಾಂತ ಚಂದ್ರನ
ಕಿರಣ ತಾಗಲು ವಜ್ರಹತಿ ಗ
ಬ್ಬರಿಸಿದಲ್ಲದೆ ಗಿರಿಗಳೊಡೆಯವು ಭೀಷ್ಮ ಕೇಳೆಂದ ೪೫

ದೂತರನು ಕಟ್ಟುವುದು ರಾಯರಿ
ಗೇತರುಚಿತವು ನಮ್ಮ ಕಟ್ಟಲು
ಕಾತರಿಸುತಿದೆ ನಿಮ್ಮ ಮೊಮ್ಮಂದಿರನು ನೀ ಕರೆಸಿ
ಮಾತನಾಡಿಸಿ ನೋಡು ನಮಗೀ
ಭೀತಿ ತಾನಿಲ್ಲೆನಲು ಗಂಗಾ
ಜಾತ ಧೃತರಾಷ್ಟ್ರಂಗೆ ನುಡಿದನು ಕೌರವನ ಹದನ ೪೬

ಅವನಿಪತಿ ಕೇಳಿದನು ಕನಲಿದನು
ಶಿವ ಶಿವೆಂದನು ವಿದುರ ಕರೆ ಕೌ
ರವನು ಮಗನೇ ಮೃತ್ಯುವಲ್ಲಾ ಭರತ ಸಂತತಿಗೆ
ಅವಳ ಬರಹೇಳಿತ್ತ ಮಗನಾ
ಟವನು ನೋಡಲಿ ಹೆತ್ತ ಮೋಹದ
ಹವಣುಗಳ ಬೆಸಗೊಂಬ ಗಾಂಧಾರಿಯನು ಕರೆಯೆಂದ ೪೭

ಜನಪನಾಜ್ಞೆಯ ಮೇಲೆ ದುರಿಯೋ
ಧನನ ತಂದರು ಸಭೆಗೆ ಮತ್ತೀ
ವನಜಮುಖಿಗಿದನೆಂದೊಡಾ ಗಾಂಧಾರಿ ನಡೆತಂದು
ದನುಜವೈರಿಯ ಕಟ್ಟುವೈ ಕೃ
ಷ್ಣನನು ಬಿಗಿವೈ ದಿಟ ಮಗನೆ ಹೆ
ತ್ತೆನಗೆ ಹರುಷವನಿತ್ತೆಯೆಂದಳು ಮುಳಿದು ಗಾಂಧಾರಿ ೪೮

ನೆಟ್ಟನೆಲೆ ಧೃತರಾಷ್ಟ್ರ ನೃಪ ನೀ
ನಿಟ್ಟ ಕಿಚ್ಚಿದು ಪಾಪಿ ಮಗನನು
ಹುಟ್ಟಿದಂದೇ ಬಿಸುಡದಾದೆವು ಬಾಳುಗೇಡಿಯನು
ಕಟ್ಟುವನು ಗಡ ಕೃಷ್ಣನನು ಮೈ
ಮುಟ್ಟುವನು ಗಡ ಗಗನವನು ಬಲು
ದಿಟ್ಟತನ ತಾನೇನು ಹೇಳುವೆನೆಂದಳಿಂದುಮುಖಿ ೪೯

ದುರುಳ ಮಗನೇ ಕೃಷ್ಣರಾಯನ
ಕೆರಳಿಚುವರೇ ಯಾದವರು ನಮ
ಗೆರವಿಗರೆ ವಸುದೇವನಲಿ ತಾ ಭೇದವೇ ನಿನಗೆ
ದುರುಳತನವಿದು ಬೇಡ ಖುಲ್ಲರ
ನೆರವಿಯೊಳಗಾಡಿದೊಡೆ ತಪ್ಪದು
ನರಕವೆಂದನು ಕುರುಪತಿಗೆ ಧೃತರಾಷ್ಟ್ರ ಭೂಪಾಲ ೫೦

ಎಲೆ ಮರುಳೆ ಧೃತರಾಷ್ಟ್ರ ನಂಜಿನ
ಬಳಗವೀತನ ಬಂಧುಕೃತ್ಯದ
ಬಳಕೆಯಲಿ ನೀ ನಿನ್ನ ಕಂದನ ಬೇಡಿಕೊಳಲೇಕೈ
ಮುಳಿದು ಬಗುಳುವ ನಾಯ್ಗೆ ಚಂದ್ರಮ
ನಳುಕುವನೆ ನರಿಯೊರಲಿದೊಡೆ ಕಳ
ವಳವಹುದೆ ಸಿಂಹಕ್ಕೆಯೆಂದನು ಖಾತಿಯಲಿ ವಿದುರ ೫೧

ನೊರಜು ಹೊಕ್ಕೊಡೆ ಕಲಕುವುದೆ ಸಾ
ಗರದ ಜಲ ನೊಣವೆರಗಿದೊಡೆ ಕುಲ
ಗಿರಿಗಳಲ್ಲಾಡುವವೆ ಕೇಳ್ ಧೃತರಾಷ್ಟ್ರ ಭೂಪತಿಯೆ
ತೆರಳಲರಿವನೆ ಕೊಬ್ಬಿದೊಳ್ಳೆಯ
ಮರಿಗೆ ಗರುಡನು ನಿನ್ನ ಮಕ್ಕಳ
ದುರುಳತನಕಂಜುವನೆ ಮುರರಿಪುವೆಂದನಾ ವಿದುರ ೫೨

ಲೋಕ ಮೈ ಮರೆವಂದು ಜಲಧಿಗ
ಳೌಕಿ ಹಳಚುವ ಹೊತ್ತು ತಾನಿಹ
ನೇಕಮೇವಾದ್ವಿತಿಯ ಪರಮೇಕೈಕಹಂಯೆಂದು
ಏಕಮಾತ್ಮಾಯೆಂದು ವೇದಾ
ನೀಕ ಕೈವಾರಿಸಲು ಮೆರೆವ ನಿ
ರಾಕೃತಿಯ ಪರಬೊಮ್ಮ ರೂಪಿನ ತಾತ ನೋಡೀತ ೫೩

ಈತನಾ ಮಧು ಕೈಟಭನ ಮುರಿ
ದಾತ ಜಲಧಿಯೊಳಿಳಿದು ವೇದವ
ನೀತ ತಂದನು ಜಯನ ವಿಜಯನ ದೈತ್ಯಜನ್ಮವನು
ಈತನೊದೆದನು ಪೌಂಡ್ರಕನನಂ
ದೀತ ಕೊಂದನು ಹಂಸ ಡಿಬಿಕರ
ನೀತನೊರಸಿದನರಸ ಚಿತ್ತೈಸೆಂದನಾ ವಿದುರ ೫೪

ಸಲಿಲಮಯವಾದಖಿಳ ಭುವನಾ
ವಳಿಗಳೊಳಗೆ ವಿರಿಂಚಿಯಾಳುತ
ಮುಳುಗುತ್ತೈತಂದಾಲದೆಲೆ ಮಂಚದಲಿ ಪವಡಿಸಿದ
ಹೊಳವು ನೀನಾರೆಂದು ಜಠರದೊ
ಳಿಳಿಯಲಾ ಬ್ರಹ್ಮಾಂಡ ಶತದಲಿ
ಹೊಲಬುಗೆಡೆ ಹೊಕ್ಕುಳಲಿ ಬ್ರಹ್ಮನನೀತನುಗುಳಿದನು ೫೫

ಸೂಚಿಸುವ ಶ್ರುತಿನಿಚಯ ಬರಬರ
ನಾಚಿದವು ವೇದಾಂತನಿಚಯದ
ವಾಚನೆಗಳಳವಳಿದು ನಿಂದುವು ನಿಜವ ಕಾಣಿಸದೆ
ಆಚರಿಸಲಳವಲ್ಲ ಮುನಿಗಳ
ಗೋಚರಕೆ ಮನಗುಡದ ಹರಿಯನು
ನೀಚರರಿಯದೆ ಬಿಗಿಯಲಳವಡಿಸಿದರು ನೇಣುಗಳ ೫೬

ವಿದುರನಿಂತೆನುತಿರಲು ಮಿಂಚಿನ
ಹೊದರು ಹುರಿಗೊಂಡಂತೆ ರವಿಶತ
ಉದುರಿದವು ಮೈಮುರಿದು ನಿಂದಡೆ ದೇವರಂಗದಲಿ
ಸದೆದುದಾಸ್ಥಾನವನು ಘನ ತೇ
ಜದ ಲಹರಿ ಲೀಲೆಯಲಿ ಹರಿ ತೋ
ರಿದನು ನಿರುಪಮ ವಿಶ್ವರೂಪವನಾ ಮಹಾಸಭೆಗೆ ೫೭

ಚರಣದುಂಗುಟದಲ್ಲಿ ದೇವರು
ತುರುಗಿದರು ನೊಸಲಿನಲಿ ಕಮಲಜ
ನುರದಲಗ್ಗದ ರುದ್ರನಾಸ್ಯದೊಳಗ್ನಿ ವಾಯುಗಳು
ಬೆರಳಲಿಂದ್ರಾದಿಗಳು ನಯನಾಂ
ಬುರುಹದಲಿ ರವಿ ನಾಭಿಯಲಭವ
ವರ ಭುಜಾಗ್ರದೊಳಖಿಳ ದಿಗುಪಾಲಕರು ರಂಜಿಸಿತು ೫೮

ಸುರರು ಖಚರರು ಕಿನ್ನರರು ಕಿಂ
ಪುರುಷರನುಪಮ ಸಿದ್ಧ ವಿದ್ಯಾ
ಧರರು ವಸುಗಳು ಮನುಗಳಾದಿತ್ಯರು ಭುಜಂಗಮರು
ಗರುಡ ಗಂಧರ್ವಾಶ್ವಿನೀ ದೇ
ವರು ಸುವಿಶ್ವೇ ದೇವರಖಿಳಾ
ಪ್ಸರೆಯರೆಸೆದರು ರೋಮ ರೋಮದ ಕುಳಿಯ ಚೌಕದಲಿ ೫೯

ಬಲದ ಭುಜದಲಿ ಪಾರ್ಥನೆಡದಲಿ
ಹಲಧರನು ಚರಣದಲಿ ಧರ್ಮಜ
ಕಲಿ ವೃಕೋದರ ನಕುಲ ಸಹದೇವಾದಿ ಯಾದವರು
ಲಲಿತ ಕಾಂತಿಯೊಳಖಿಳ ತಾರಾ
ವಳಿಗಳಮಲಗ್ರಹವಿರಲು ತೊಳ
ತೊಳಗಿ ಮೆರೆದನು ವಿಶ್ವರೂಪ ವಿಹಾರಿ ಮುರವೈರಿ ೬೦

ಕಿವಿಗಳಲಿ ಕಂಗಳಲಿ ನಾಸಾ
ವಿವರದಲಿ ಹೊಗೆ ಮಸಗಿ ದಳ್ಳುರಿ
ತಿವಿದುದಾಕಾಶವನು ಕವಿದುದು ಕಾಂತಿ ದೆಸೆದೆಸೆಗೆ
ರವಿಯ ತಗಡೆನೆ ತಳಿತವಾಯುಧ
ನಿವಹ ಸಾಸಿರಭುಜದ ಬಹುಳತೆ
ಯವಗಡಿಸಿ ವೈಕುಂಠನೆಸೆದನು ವಿಶ್ವರೂಪವಲಿ ೬೧

ಅರಳಮಳೆ ಸೂಸಿದುವು ದುಂದುಭಿ
ಮೊರೆದುಕಾಶದಲಿ ಮುದದಲಿ
ಧರಣಿ ಬಿದಿರಿತು ತನುವನುಕ್ಕಿದುದಬುಧಿ ದೆಸೆದೆಸೆಗೆ
ಕರಿ ಕಮಠರುಬ್ಬಾಳುತನ ಮಿ
ಕ್ಕಿರೆ ಮಹಾದ್ಭುತವಾಯ್ತು ಕಂಡುದು
ಹರಿಯ ರೂಪವನೊಬ್ಬ ಕೌರವನಲ್ಲದುಳಿದವರು ೬೨

ತಳುಕನುಗಿದೀಡಾಡಿ ಪರಿಣತ
ಪುಳಕದಲಿ ನನೆನನೆದು ಹರುಷದ
ಜಲಧಿಯಲಿ ಮನ ಮುಳುಗಿ ಭಕುತಿಯ ಭಾರದಲಿ ಕುಸಿದು
ಅಳುಕಿ ತಮುತಮಗೆದ್ದು ಮುನಿ ಸಂ
ಕುಲ ಸಹಿತ ಗಾಂಗೇಯ ಕೃಪ ನಿ
ರ್ಮಲ ವಿದುರ ಗುರು ಸಂಜಯಾದಿಗಳೆರಗಿದರು ಪದಕೆ ೬೩

ಒಳಗೆ ಹೊಳೆದನು ಬಾಹ್ಯದಲಿ ಪ್ರ
ಜ್ವಲಿಸಿದನು ತಾನಲ್ಲದನ್ಯರ
ಬಳಕೆ ಬೇರೊಂದಿಲ್ಲದಂತಿರೆ ಕೂಡೆ ತೋರಿದನು
ಒಳಗೆ ಬಿಗಿವೆವೊ ಹೊರಗೆ ಕೃಷ್ಣನ
ಸಿಲುಕಿಸುವೆವೋ ತಿಳಿಯೆ ಕೃಷ್ಣರು
ಹಲಬರಿಹರಾರಾರ ಕಟ್ಟುವೆವೆಂದರಾ ಖಳರು ೬೪

ಅನುಪಮಾದ್ವಯದಲ್ಲಿ ಮುಳ್ಳಿನ
ಮೊನೆಗೆ ಮೋಹುವರಿಲ್ಲ ತೆರಹೆಂ
ಬಿನಿತು ಪರಿಪೂರ್ಣದಲಿ ಸಭೆಯಣುಮಾತ್ರ ರೂಪದಲಿ
ಮನದ ಬಗೆ ಮುಟ್ಟದ ಮಹಾ ಮಹಿ
ಮನನು ಕಟ್ಟುವೆವೆಂತೆನುತ ತನ
ತನಗೆ ಕರ್ಣಾದಿಗಳು ಕೈಗಳ ಕದಪ ತೂಗಿದರು ೬೫

ವಿಮಳ ಕರುಣಾಸಿಂಧು ನೀನನು
ಪಮ ಚರಿತ್ರನು ನಿಮ್ಮಡಿಯ ಪದ
ಕಮಲ ದರುಶನದಿಂದ ಹಿಂಗಿದವಘದ ರಾಶಿಗಳು
ಸಮತೆಯಲಿ ನೀ ನೋಡು ಶರಣರ
ಮಮತೆ ಬೇಹುದು ಜೀಯ ಲಕ್ಷ್ಮೀ
ರಮಣ ಕೃಪೆ ಮಾಡೆನುತ ಮೈಯಿಕ್ಕಿದಳು ಗಾಂಧಾರಿ ೬೬

ಮಾನ ನಿನ್ನದು ಭಕುತ ಜನದಪ
ಮಾನ ನಿನ್ನದು ನಿನ್ನ ಶರಣರ
ಹಾನಿ ವೃದ್ಧಿಗಳೆಲ್ಲ ನಿನ್ನದು ಬೇರೆ ಗತಿಯುಂಟೆ
ಆನತರ ತೇಜೋಭಿಮಾನವ
ನೀನೊಲಿದು ಸಲಹೆಂದು ಮುದದಲಿ
ಭಾನುಮತಿ ಮೈಯಿಕ್ಕಿದಳು ಮುರಹರನ ಚರಣದಲಿ ೬೭

ಕಂಗಳನು ಕರುಣಿಸಿದನಂಧ ನೃ
ಪಂಗೆ ಬಳಿಕೀ ಕೃಷ್ಣರಾಯನ
ಮಂಗಳ ಶ್ರೀಮೂರ್ತಿಯನು ಮನದಣಿಯೆ ತಾ ನೋಡಿ
ಕಂಗಳಡಗಲಿ ದೇವ ನಿಮ್ಮಾ
ಯಂಗವಟ್ಟವ ಕಂಡು ಬಳಿಕೀ
ಕಂಗಳಿತರವ ಕಾಣಲಾಗದು ಕೃಪೆಯ ಮಾಡೆಂದ ೬೮

ತಾತ ಹೆದರದಿರೀ ಮುಕುಂದನ
ಕೈತವಕೆ ಬೆಚ್ಚದಿರು ಸಂಧಿಯ
ಮಾತು ತಾನಿದು ಹೃದಯವೇ ಬೆಸಗೊಳ್ಳಿ ಮುರಹರನ
ಈತನಂತರ್ಯಾಮಿ ಜೀವ
ವ್ರಾತದಲಿ ಜನಜನಿತವಿದು ಜಗ
ವೀತನಾಜ್ಞೆಯೊಳೊಲವುದೆಂದನು ಕೌರವರ ರಾಯ ೬೯

ಸಂಗಿಯೆನಿಸನು ಜಗವ ಹುಟ್ಟಿಸಿ
ನುಂಗಿದೊಡೆ ನಿಷ್ಕರುಣಿಯೆನಿಸನು
ಅಂಗರಕ್ಷೆಯ ಮಾಡಿ ಮೋಹಿತನಲ್ಲ ಮೂಜಗಕೆ
ಜಂಗಮ ಸ್ಥಾವರಕೆ ಚೈತ
ನ್ಯಾಂಗರಕ್ಷನು ಘನಕೆ ಘನ ಅಣು
ವಿಂಗೆ ತಾನಣುವೆನಿಪ ಪರತರವಸ್ತು ನೋಡೀತ ೭೦

ಎನ್ನ ಹೃದಯದೊಳಿರ್ದು ಮುರಿವನು
ಗನ್ನದಲಿ ಸಂಧಿಯನು ರಿಪುಗಳೊ
ಳಿನ್ನು ತನ್ನವರವರೊಳಿರ್ದಾ ನುಡಿವನೀ ಹದನ
ಭಿನ್ನನಂತಿರೆ ತೋರಿ ಭಿನ್ನಾ
ಭಿನ್ನನೆನಿಸಿಯೆ ಮೆರೆವ ತಿಳಿಯಲ
ಭಿನ್ನನೈ ಮುರವೈರಿ ನಾವಿನ್ನಂಜಲೇಕೆಂದ ೭೧

ಹಳಚುವುವು ಹಾಹೆಗಳು ಸೂತ್ರವ
ನಲುಗಿದೊಡೆ ತತ್ಪುಣ್ಯ ಪಾಪಾ
ವಳಿಗಳಾ ಹಾಹೆಗಳಿಗುಂಟೇ ಸೂತ್ರಧರನಿರಲು
ಕೊಲುವನನ್ಯರನನ್ಯರಿಂದವೆ
ಕೊಲಿಸುವನು ಕಮಲಾಕ್ಷನಲ್ಲದೆ
ಉಳಿದ ಜೀವವ್ರಾತಕೀ ಸ್ವಾತಂತ್ರ್ಯವಿಲ್ಲೆಂದ ೭೨

ಇಳಿದನವನಿಗೆ ಧಾರುಣಿಯ ಹೊರೆ
ಗಳೆಯಲೋಸುಗವಿಲ್ಲಿ ನಮ್ಮೊ
ಳಗೆ ವೈರವ ಬಿತ್ತಿ ಬರಿಕೈವನು ಮಹಾಬಲವ
ಥಳಿಕೆ ಮಣಿಯದೆ ರಾವಣಾದಿಗ
ಳಳಿದರಿದಲಾ ಕೀರ್ತಿಕಾಯ ವಿ
ದಳಿವುದಗ್ಗದ ಕೀರ್ತಿಯುಳಿವುದು ಅಂಜಲೇಕೆಂದ ೭೩

ನಾವು ಸಂಧಿಯನೊಲಿವೆವೆಮ್ಮಯ
ಭಾವದಲಿ ಹುಳುಕಿಲ್ಲ ಸಂಪ್ರತಿ
ದೇವನಭಿಮತವಲ್ಲ ಬಲ್ಲೆನು ಮುರಹರನ ಬರವ
ನೀವು ಮೇಗರೆಯರಿತದವರೀ
ರಾವಣಾರಿಯ ಬಗೆಯ ಬಲ್ಲೆನು
ಸಾವನೀತನ ಕೈಯ ಬಾಯಲಿ ಭೀತಿ ಬೇಡೆಂದ ೨೪

ಮಣಿದು ಬದುಕುವನಲ್ಲ ಹಗೆಯಲಿ
ಸೆಣಸಿ ಬಿಡುವವನಲ್ಲ ದಿಟ ಧಾ
ರುಣಿಯ ಸಿರಿಗಳುಪುವವನಲ್ಲಳುಕಿಲ್ಲ ಕಾಯದಲಿ
ರಣ ಮಹೋತ್ಸವವೆಮ್ಮ ಮತ ಕೈ
ದಣಿಯೆ ಹೊಯ್ದಾಡುವೆನು ಕೃಷ್ಣನ
ಕೆಣಕಿದಲ್ಲದೆ ವಹಿಲದಲಿ ಕೈವಲ್ಯವಿಲ್ಲೆಂದ ೨೫

ಎನಲು ನಸುನಗುತಸುರರಿಪು ಮು
ನ್ನಿನ ಮನುಷ್ಯಾಕಾರವನು ಮಗು
ಳನುಕರಿಸಿ ಧೃತರಾಷ್ಟ್ರ ಭೀಷ್ಮರಿಗೆಂದನೀ ಹದನ
ಘನ ಸುಯೋಧನ ಪಾಂಡುವಿನ ನಂ
ದನರೊಳಾದ ವಿವಾದ ನಮಗೇ
ಕೆನುತ ರಾಜಾಲಯವನಸುರಧ್ವಂಸಿ ಹೊರವಂಟ ೨೬

ಬಂದು ವಿದುರನ ಮನೆಗೆ ದೇವ ಮು
ಕುಂದ ಕುಂತಿಯ ಕರೆದು ನಿನ್ನಯ
ಕಂದರೈವರ ಮೇಲೆ ಕೌರವ ನೃಪನ ಖತಿ ಹಿರಿದು
ಇಂದು ಮುರಿದುದು ಸಂಧಿ ನಿನ್ನಯ
ಕಂದ ಕರ್ಣನ ಬೇಡಿಕೊಳು ನೀ
ನೆಂದು ನೇಮಿಸಿ ಮರಳಿದನು ಮುರವೈರಿ ಹರುಷದಲಿ ೨೭

ವಿದುರ ಭಾರದ್ವಾಜ ಗೌತಮ
ನದಿಯ ಮಗ ಧೃತರಾಷ್ಟ್ರನಾತನ
ಸುದತಿ ಕರ್ಣ ವಿಕರ್ಣ ಶಲ್ಯ ಸುಬಾಹು ಗುರುಸುತರು
ವದನದುತ್ಸವವಡಗಿ ಕೃಷ್ಣನ
ಪದವನೋಲೈಸುತ್ತ ಬರೆ ಕರು
ಣದಲಿ ಮುರಹರನವರನುಚಿತೋಕ್ತಿಯಲಿ ಬೀಳ್ಕೊಟ್ಟ ೨೮

ನಯದೊಳೇಕಾಂತದಲಿ ಸಲೆ ತೋ
ರಿಯೆ ನುಡಿವುದವನಾಶೆಯನು ನೀವ್
ಬಯಸಲಾಗದು ಹಿತವನೇ ಮಾಡುವುದು ಕುರುಕುಲಕೆ
ನಿಯತವಿದು ಪಾಂಡವರೊಡನೆ ಸಂ
ಧಿಯೆ ಸರಸ ಸಮರಾಂಗವೀಯ
ನ್ವಯಕೆ ನಿರ್ಣಯವೆಂದು ನೀವಾತಂಗೆ ಹೇಳುವುದು ೨೯

ಎಂದು ಗಾಂಗೇಯಾದಿಗಳನರ
ವಿಂದನಾಭನು ಬೀಳುಕೊಟ್ಟನು
ನಿಂದು ತಾ ರವಿಸುತನ ಕರೆದನು ರಥದ ಹೊರೆಗಾಗಿ
ಬಂದು ಕಿರಿದೆಡೆಗಾಗಿ ಕಳುಹುವು
ದೆಂದು ನೇಮಿಸಿ ಬಳಿಕ ತಾಪಸ
ವೃಂದವನು ಕಾರುಣ್ಯನಿಧಿ ಕಳುಹಿದ ತಪೋವನಕೆ ೩೦

ಹತ್ತನೆಯ ಸಂಧಿ

ಸೂ. ಸೆಣಸುವದಟರ ಗಂಡ ಸಮರಾಂ
ಗಣ ಕಮಲ ಭೇರುಂಡನಾ ದಿನ
ಮಣಿಯ ಮಗನುದ್ದಂಡ ಕರ್ಣನ ಕಂಡಳಾ ಕುಂತಿ

ಒಲಿದವರನುಜ್ಜೀವಿಸುವ ಬಗೆ
ಬಲುಹು ಮುರಮಥನಂಗೆ ಮುನಿದೊಡೆ
ತಲೆಯ ಬರೆಹವ ತೊಡೆವನಲ್ಲದೆ ಬಳಿಕ ಸೈರಿಸನು
ನಳಿನನಾಭನು ಭಜಕರಿಗೆ ಬೆಂ
ಬಳಿಯ ಬಿರುದನು ಭೇದದಲಿ ಕುರು
ಕುಲವ ಕೊಂದನು ಕೇಳು ಜನಮೇಜಯ ಮಹೀಪಾಲ ೧

ಇನತನೂಜನ ಕೂಡೆ ಮೈದುನ
ತನದ ಸರಸವನೆಸಗಿ ರಥದೊಳು
ದನುಜರಿಪು ಬರಸೆಳೆದು ಕುಳ್ಳಿರಿಸಿದನು ಪೀಠದಲಿ
ಎನಗೆ ನಿಮ್ಮಡಿಗಳಲಿ ಸಮಸೇ
ವನೆಯೆ ದೇವ ಮುರಾರಿಯುಂಜುವೆ
ನೆನಲು ತೊಡೆ ಸೋಂಕಿನಲಿ ಸಾರಿದು ಶೌರಿಯಿಂತೆಂದ ೨

ಭೇದವಿಲ್ಲಿಲೆ ಕರ್ಣ ನಿಮ್ಮೊಳು
ಯಾದವರು ಕೌರವರೊಳಗೆ ಸಂ
ವಾದಿಸುವಡನ್ವಯದ ಮೊದಲೆರಡಿಲ್ಲ ನಿನ್ನಾಣೆ
ಮೇದಿನೀಪತಿ ನೀನು ಚಿತ್ತದೊ
ಳಾದುದರಿವಿಲ್ಲೆನುತ ದಾನವ
ಸೂದನನು ರವಿಸುತನ ಕಿವಿಯಲಿ ಬಿತ್ತಿದನು ಭಯವ ೩

ದಾನವಾಂತಕ ಬೆಸಸು ವಂಶ ವಿ
ಹೀನನನು ನಿಮ್ಮಡಿಗಳೊಡನೆ ಸ
ಮಾನಿಸುವರೇ ಸಾಕೆನುತ ರವಿಸೂನು ಕೈಮುಗಿಯೆ
ಮಾನನಿಧಿ ನಿನ್ನಾಣೆ ಬಾರೈ
ನೀನು ನಮ್ಮೆಲ್ಲರ ಹವಣೆ ವರ
ಭಾನುವಂಶಲಲಾಮ ನೀ ರಾಮಂಗೆ ಸರಿಯೆಂದ ೪

ಕಳೆದು ಕೊಂಡನು ವೀಳೆಯವನಂ
ಜುಳಿಯಲಾತಂಗಿತ್ತು ಕರ್ಣನ
ಕೆಲಕೆ ಬರಸೆಳೆದವನ ಕರದೊಳು ಕರತಳವನಿಕ್ಕಿ
ಎಲೆ ದಿವಾಕರತನಯ ನಿನ್ನಯ
ಕುಲವನರಿಯೆಯಲಾ ಸುಯೋಧನ
ನಲಿ ವೃಥಾ ಸೇವಕತನದಲಿಹುದುಚಿತವಲ್ಲೆಂದ ೫

ಲಲನೆ ಪಡೆದೀಯೈದು ಮಂತ್ರಂ
ಗಳಲಿ ಮೊದಲಿಗ ನೀನು ನಿನ್ನಯ
ಬಳಿ ಯುಧಿಷ್ಠಿರದೇವ ಮೂರನೆಯಾತ ಕಲಿಭೀಮ
ಫಲುಗುಣನು ನಾಲ್ಕನೆಯಲೈದನೆ
ಯಲಿ ನಕುಲ ಸಹದೇವರಾದರು
ಬಳಿಕ ಮಾದ್ರಿಯಲೊಂದು ಮಂತ್ರದೊಳಿಬ್ಬರುದಿಸಿದರು ೬

ಆದರಿನಾ ಪಾಂಡವರಲೈವರ
ಮೊದಲಿಗನು ನೀನಿರಲು ಧರಣಿಯ
ಕದನವಿತ್ತಂಡಕ್ಕೆ ಕಾಮಿತವಲ್ಲ ಭಾವಿಸಲು
ಇದು ನಿಧಾನವು ಕರ್ಣ ನಿನ್ನ
ಭ್ಯುದಯವನೆ ಬಯಸುವೆನು ನಿನ್ನಯ
ಪದಕೆ ಕೆಡಹುವೆನೈವರನು ನಡೆ ತನ್ನ ಸಂಗಾತ ೭

ನಿನಗೆ ಹಸ್ತಿನಪುರದ ರಾಜ್ಯದ
ಘನತೆಯನು ಮಾಡುವೆನು ಪಾಂಡವ
ಜನಪ ಕೌರವ ಜನಪರೋಲೈಸುವರು ಗದ್ದುಗೆಯ
ನಿನಗೆ ಕಿಂಕರವೆರಡು ಸಂತತಿ
ಯೆನಿಸಲೊಲ್ಲದೆ ನೀನು ದುರಿಯೋ
ಧನನ ಬಾಯ್ದಂಬುಲಕೆ ಕೈಯಾನುವರೆ ಹೇಳೆಂದ ೮

ಎಡದ ಮೈಯಲಿ ಕೌರವೇಂದ್ರರ
ಗಡಣ ಬಲದಲಿ ಪಾಂಡು ತನಯರ
ಗಡಣವಿದಿರಲಿ ಮಾದ್ರ ಮಾಗಧ ಯಾದವಾದಿಗಳು
ನಡುವೆ ನೀನೊಲಗದೊಳೊಪ್ಪುವ
ಕಡು ವಿಲಾಸವ ಬಿಸುಟು ಕುರುಪತಿ
ನುಡಿಸೆ ಜೀಯ ಹಸಾದವೆಂಬುದು ಕಷ್ಟ ನಿನಗೆಂದ ೯

ಶೌರಿಯದಲಿದಿರಿಲ್ಲ ಕುಲದಲಿ
ಸೂರಿಯನ ಮಗನೊಡನೆ ಹುಟ್ಟಿದ
ವೀರರೈವರು ಪಾಂಡುತನಯರು ನಿನ್ನ ವೈಭವಕೆ
ಆರು ಸರಿಯೈ ಕರ್ಣ ನಡೆ ನಡೆ
ಧಾರುಣೀಪತಿಯಾಗು ನೀನಿರೆ
ವೈರವಿತ್ತಂಡಕ್ಕೆ ಬಳಿಕಿಲ್ಲೆಂದನಸುರಾರಿ ೧೦

ಕೊರಳ ಸೆರೆ ಹಿಗ್ಗಿದವು ದೃಗುಂಜಲ
ಉರವಣಿಸಿ ಕಡು ನೊಂದನಕಟಾ
ಕುರುಪತಿಗೆ ಕೇಡಾದುದೆಂದನು ಮನದೊಳಗೆ
ಹರಿಯ ಹಗೆ ಹೊಗೆದೋರದುರುಹದೆ
ಬರಿದೆ ಹೋಹುದೆ ತನ್ನ ವಂಶವ
ನರುಹಿ ಕೊಂದನು ಹಲವು ಮಾತೇನೆಂದು ಚಿಂತಿಸಿದ ೧೧

ಕಾದಿ ಕೊಲುವೊಡೆ ಪಾಂಡುಸುತರು ಸ
ಹೋದರರು ಕೊಲಲಿಲ್ಲ ಕೊಲ್ಲದೆ
ಕಾದೆನಾದೊಡೆ ಕೌರವಂಗವನಿಯಲಿ ಹೊಗಲಿಲ್ಲ
ಭೇದದಲಿ ಹೊಕ್ಕಿರಿದನೋ ಮಧು
ಸೂದನಕಟಕಟೆನುತ ಘನ ಚಿಂ
ತೋದಧಿಯುಲದ್ದವೊಲು ಮೌನದೊಳಿದ್ದನಾ ಕರ್ಣ ೧೨

ಏನು ಹೇಳೈ ಕರ್ಣ ಚಿತ್ತ
ಗ್ಲಾನಿ ಯಾವುದು ಮನಕೆ ಕುಂತೀ
ಸೂನುಗಳ ಬೆಸಕೈಸಿ ಕೊಂಬುದು ಸೇರದೇ ನಿನಗೆ
ಹಾನಿಯಿಲ್ಲೆನ್ನಾಣೆ ನುಡಿ ನುಡಿ
ಮೌನವೇತಕೆ ಮರುಳುತನ ಬೇ
ಡಾನು ನಿನ್ನಪದೆಸೆಯ ಬಯಸುವನಲ್ಲ ಕೇಳೆಂದ ೧೩

ಮರುಳು ಮಾಧವ ಮಹಿಯ ರಾಜ್ಯದ
ಸಿರಿಗೆ ಸೋಲುವನಲ್ಲ ಕೌಂತೇ
ಯರು ಸುಯೋಧನರೆನಗೆ ಬೆಸಕೈವಲ್ಲಿ ಮನವಿಲ್ಲ
ಹೊರೆದ ದಾತಾರಂಗೆ ಹಗೆವರ
ಶಿರವನರಿದೊಪ್ಪಿಸುವೆನೆಂಬೀ
ಭರದೊಳಿರ್ದೆನು ಕೌರವೇಂದ್ರನ ಕೊಂದೆ ನೀನೆಂದ ೧೪

ಒಡನೆ ಹುಟ್ಟಿದೆವೆಂಬ ಕಥನವ
ನೆಡೆಗುಡದೆ ಬಣ್ಣಿಸಿದೆ ವಿಜಯನ
ಗಡುಬಾಣಕೆ ಬಲಿಯನಿಕ್ಕುವ ಹದನ ಮಾಣಿಸಿದೆ
ನುಡಿದು ಫಲವೇನಿನ್ನು ಕೇಳೆ
ನ್ನೊಡೆಯನಾದಂತಹೆನು ಬಾರೆನು
ಪೊಡವಿಯಲಿ ನೀ ಹರಹಿಕೊಳು ನಿನ್ನವರ ನಿಲಿಸೆಂದ ೧೫

ವೀರ ಕೌರವರಾಯನೇ ದಾ
ತಾರನಾತನ ಹಗೆಯ ಹಗೆ ಕೈ
ವಾರವೇ ಕೈವಾರವಾದಂತಹೆನು ಕುರುನೃಪತಿ
ಶೌರಿ ಕೇಳೈ ನಾಳೆ ಸಮರದ
ಸಾರದಲಿ ತೋರುವೆನು ನಿಜ ಭುಜ
ಶೌರಿಯದ ಸಂಪನ್ನತನವನು ಪಾಂಡುತನಯರಲಿ ೧೬

ಹಲವು ಮಾತೇನಖಿಳ ಜನಕೆ
ನ್ನಳಿವು ಸೊಗಸದು ಕೌರವೇಶ್ವರ
ನೊಲುಮೆ ತಪ್ಪಿಸಿ ಭುವನದೊಳಗೆನಗಾಪ್ತ ಜನವಿಲ್ಲ
ಸಲಹಿದನು ಮನ್ನಣೆಯಲೆನಗ
ಗ್ಗಳಿಕೆಯಲ್ಲದೆ ಹೀನ ವೃತ್ತಿಯ
ಬಳಸಿ ನಡೆಸನು ಕೌರವೇಂದ್ರನನೆಂತು ಮರೆದಪೆನು ೧೭

ನೋಡಿ ದಣಿಯನು ಬಿರುದ ಹೊಗಳಿಸಿ
ಹಾಡಿ ದಣಿಯನು ನಿಚ್ಚಲುಚಿತವ
ಮಾಡಿ ತಣಿಯನು ಮಾನನಿಧಿಯನದೆಂತು ಮರೆದಪೆನು
ಕಾಡಲಾಗದು ಕೃಷ್ಣ ಖಾತಿಯ
ಮಾಡಲಾಗದು ಬಂದೆನಾದೊಡೆ
ರೂಢಿ ಮೆಚ್ಚದು ಕೌರವನ ಹಗೆ ಹರಿಬ ತನಗೆಂದ ೧೮

ಅರುಣಜಲದಾಜ್ಯದಲಿ ಬಂಬಲು
ಗರುಳ ಚರುವಿನಲೆಲುವಿನೊಟ್ಟಿಲ
ಬೆರಳ ಸಮಿಧೆಯಲಡಗಿನಖಿಳಾಹುತಿಯ ರಚನೆಯಲಿ
ನರಕಪಾಲದ ಪಾತ್ರೆಗಳ ತಿಲ
ದೊರಳೆಗಳ ಕೇಶೌಘ ದರ್ಭಾಂ
ಕುರಹದಲಾಹವ ಯಜ್ಞ ದೀಕ್ಷಿತನಹೆನು ತಾನೆಂದ ೧೯

ಮಾರಿಗೌತಣವಾಯ್ತು ನಾಳಿನ
ಭಾರತವು ಚತುರಂಗ ಬಲದಲಿ
ಕೌರವನ ರುಣ ಹಿಂಗೆ ರಣದಲಿ ಸುಭಟ ಕೋಟಿಯನು
ತೀರಿಸಿಯೆ ಪತಿಯುವಸರಕ್ಕೆ ಶ
ರೀರವನು ನೂಕುವೆನು ನಿನ್ನಯ
ವೀರರೈವರ ನೋಯಿಸೆನು ರಾಜೀವಸಖನಾಣೆ ೨೦

ಎನಲು ಕರ್ಣನ ದೃಢವ ಕಂಡನು
ಮನದೊಳುತ್ಸಾಹಿಸಿದನಾದೊಡೆ
ತನಯರೈವರ ಹದನು ನಿನ್ನದು ಬಲುಹ ಮಾಡುವೊಡೆ
ಮನಕೆ ಖತಿಯುಹುದರುಹದಿರ್ದೊಡೆ
ತನಗೆ ಗುಣವಲ್ಲೆಂಬ ಕಾರಣ
ವಿನಿತನೊಡ್ಡೈಸಿದೆನು ನೀ ಸುಖಿಯಾಗು ಹೋಗೆಂದ ೨೧

ಬಂದರೊಳ್ಳಿತು ಬಾರದಿದ್ದೊಡೆ
ಕಂದ ಕೇಳೈ ಮಧುರ ವಚನದಿ
ಮಂದಮತಿಯನು ತಿಳುಹಿ ತಮ್ಮಂದಿರಿಗೆ ರಾಜ್ಯವನು
ಇಂದು ಕೊಡಿಸುವುದುಚಿತ ಸಂಪ್ರತಿ
ಗಿಂದು ಸೇರಿಸು ನಿನ್ನ ಮಾತನು
ಹಿಂದುಗಳೆಯನು ಕೌರವೇಶ್ವರನೆಂದನಸುರಾರಿ ೨೨

ಮುಸೆದುದಿತ್ತಂಡಕ್ಕೆ ಮತ್ಸರ
ವಸಮ ಸಂಗರವೀಗ ನೀತಿಯ
ನುಸುರಿದರೆ ಮನಗಾಣನೇ ಕೌರವ ಮಹೀಶ್ವರನು
ವಿಸಸನದ ಕಟ್ಟಾಳು ಮಂತ್ರವ
ನೆಸಗಲಾಗದು ತನ್ನ ವೀರಕೆ
ಮುಸುಳಹುದು ಮುರವೈರಿ ಸಂಧಿಯನರಿಯೆ ನಾನೆಂದ ೨೩

ಕಳುಹಬೇಹುದು ದೇವ ದ್ಥಿನಪತಿ
ಇಳಿದನಪರಾಂಬುಧಿಗೆ ಸಂಪ್ರತಿ
ಯಳಿದ ಹೊತ್ತಿಂದೀಗ ನೆಟ್ಟನೆ ನೀವು ಪಾಂಡವರು
ಹುಲುಸರವಿ ಹಾವಹುದು ಹುತ್ತಿನ
ತಲೆಯುಲಿರಲಜ್ಞರಿಗೆ ಹಿಸುಣರ
ಬಳಕೆ ಹೊಗುವುದು ಕಳುಹಬೇಕೆಂದೆರಗಿದನು ಕರ್ಣ ೨೪

ಬೀಳುಕೊಂಡನು ಮನೆಗೆ ಬಂದು ವಿ
ಶಾಲಮತಿ ಚಿಂತಿಸಿದನಾ ಸಿರಿ
ಲೋಲ ಮಾಡಿದ ತಂತ್ರ ಮನದಲಿ ನಟ್ಟು ಬೇರೂರಿ
ಕಾಳುಮಾಡಿದನಕಟ ಕೌರವ
ಬಾಳಲರಿಯದೆ ಕೆಟ್ಟನೀ ಗೋ
ಪಾಲ ಬರಿದೇ ಬಿಡನು ಜೀವವ ಕೊಳ್ಳದಿರನೆಂದ ೨೫

ವೀರ ರವಿಸುತನೊಂದು ದಿನ ರವಿ
ವಾರದಲಿ ಪರಿತೋಷ ಮಿಗೆ ಭಾ
ಗೀರಥೀ ತೀರದಲಿ ತಾತಂಗರ್ಘ್ಯವನು ಕೊಡುತ
ಸಾರ ಮಂತ್ರವ ಜಪಿಸುತಿರಲೌ
ದಾರಿಯದ ಸುರತರುವ ಕುಂತೀ
ನಾರಿ ಕಾಣಲು ಬಂದಳಾತ್ಮಜನಿದ್ದ ನದಿಗಾಗಿ ೨೬

ಬರಲು ತಾಯ್ಗಿದಿರಾಗಿ ರವಿಸುತ
ನಿರದೆ ಬಂದನು ದಂಡದಂತಿರೆ
ಚರಣದಲಿ ಮೈಯಿಕ್ಕಲಾತನ ನೊಸಲ ನೆಗಹಿದಳು
ಬರಸೆಳೆದು ಬಿಗಿದಪ್ಪಿದಳು ನೀ
ರುರವಣಿಸಿದವು ನಯನದಲಿ ಸೆರೆ
ಕೊರಳಿಗೌಕಿ ತಾನಳಲಿನಬುಧಿಯೊಳಾಳ್ದಳಾ ಕುಂತಿ ೨೭

ಆ ಸಮಯದಲಿ ಗಂಗೆ ನಾರೀ
ವೇಷದಲಿ ನಡೆತಂದಳೆಲೆ ಕುಂ
ತೀ ಸತಿಯೆ ಕೈಯೆಡೆಯ ಕಂದನನೊಪ್ಪುಗೊಳು ನೀನು
ಈಸು ದಿನವಿವನಾಗುಹೋಗಿನ
ಗಾಸಿಯನು ತಲೆಗಾಯ್ದೆ ನಿನ್ನಯ
ಭಾಷೆ ಸಂದುದೆನುತ್ತ ತಾಯಿಗೆ ಕೊಟ್ಟಳಾತ್ಮಜನ ೨೮

ಇರಲಿರಲು ರವಿ ಬಂದನೆಕ್ಕಟಿ
ಕರೆದನೀತನ ಕಿವಿಯೊಳೆಲ್ಲವ
ನೊರೆದ ನಿನಗೆಲೆ ಮಗನೆ ಕುಂತೀದೇವಿ ತಾಯಹುದು
ಮುರಹರನ ಮತದಿಂದ ನಿನ್ನಯ
ಸರಳ ಬೇಡಲು ಬಂದಳಂದಿನ
ಹರಿಗೆ ಕವಚವನಿತ್ತವೊಲು ಮರುಳಾಗಬೇಡೆಂದ ೨೯

ಬೆಸಸಿದುದಕೆ ಹಸಾದವೆಂದನು
ಬಿಸಜಬಂಧುವ ಕಳುಹಿದನು ಮ
ನ್ನಿಸಿದನಿತ್ತಲು ಮಾತೆಯನು ಭಯಭರಿತ ಭಕ್ತಿಯಲಿ
ಒಸೆದು ಬಿಜಯಂಗೈದ ಹದನನು
ವುಸುರ ಬೇಹುದು ತಾಯೆಯೆನೆ ಶೋ
ಕಿಸುತ ನುಡಿದಳು ಕುಂತಿ ಕರ್ಣನ ತೆಗೆದು ಬಿಗಿಯಪ್ಪಿ ೩೦

ಮಗನೆ ತಮ್ಮಂದಿರನು ಪಾಲಿಸು
ವಿಗಡತನವನು ಮಾಣು ನೀನೋ
ಲಗಿಸುವರೆ ಕುರುಪತಿಯ ನಿನಗವರಿದಿರೆಯಿತ್ತಂಡ
ಸೊಗಸು ತಾನೆಂದುದನು ಹಿಸುಣರ
ಬಗೆಯ ನೀ ಕೇಳದಿರು ನೀ ಮನ
ಬಿಗಿಸದಿರು ಸಲಿಸೆನ್ನ ವಚನವನೆಂದಳಾ ಕುಂತಿ ೩೧

ತಾಯಹುದು ತಾ ಬಲ್ಲೆನದು ಸಂ
ಜಾಯತವು ಪಾಂಡವರು ತಮ್ಮದಿ
ರೀಯುಭಯ ರಾಯರಲಿ ಪಟ್ಟದ ಹಿರಿಯ ತಾನಹುದು
ರಾಯನೆನ್ನನು ನೆಚ್ಚಿ ಹೊರೆದನು
ಸಾಯಲಳುಕುವನೇ ಸುಡೇತರ
ದೀಯಿಳೆಯ ಬಾಳಿಕೆ ಕೃತಘ್ನತೆಗೆಲ್ಲಿ ಗತಿಯೆಂದ ೩೨

ಮಕ್ಕಳೈವರಿಗಾ ಹಿರಿಯನದು
ತಕ್ಕ ಮಾತಲೆ ತಾಯೆ ಸಂದೇ
ಹಕ್ಕೆ ನೆಲೆಯಿಲ್ಲದು ನಿಲಲಿ ಧಾರುಣಿಯ ಬಯಸುವರೆ
ತಕ್ಕುದೇ ದಾತಾರನರಸಿಯೊ
ಳೊಕ್ಕತನವಿರಲಾರು ಮೆಚ್ಚುವ
ರಕ್ಕ ಹೇಳೌ ಹೇಸಳೇ ಜಯಲಕ್ಷ್ಮಿ ತನಗೆಂದ ೩೩

ಇಂದು ನೀವರುಹಿದ ಬಳಿಕ ರವಿ
ನಂದನನುಯೊಂದರಿದೆನಲ್ಲವೆ
ಹಿಂದೆ ದುರಿಯೋಧನನದಾವುದ ನೋಡಿ ಸಲಹಿದನು
ಬಂದು ಪಾಂಡವರೊಡನೆ ಕೂಡಿದ
ರಿಂದು ನಗವೇ ಲೋಕವಂತಿರ
ಲಿಂದು ನಿಮ್ಮಡಿ ಬಂದ ಕಾರ್ಯವ ಬೆಸಸಿ ನೀವೆಂದ ೩೪

ಆದೊಡೈವರ ಮಕ್ಕಳನು ತರಿ
ಗಾಯ್ದು ತೋರ್ಪೆ ಕಂದ ನಿನಗೆ
ಸ್ನೀ ದುರಾಗ್ರಹವೊಪ್ಪುವುದೆ ಕೌರವನ ಸೇವೆಯಲಿ
ಹೋದ ಬಾಣವ ಮರಳಿ ತೊಡದಿರು
ಮಾದು ಕಳೆ ವೈರವನೆನಲ್ಕೆ ಹ
ಸಾದವೆಂದನು ಬೀಳುಕೊಟ್ಟನು ಬಂದನರಮನೆಗೆ ೩೫

ಹನ್ನೊಂದನೆಯ ಸಂಧಿ

ಸೂ. ಅವನಿಯದಿರಿತು ಗಗನ ತಾರಾ
ನಿವಹವನು ಬಿದಿರಿತ್ತು ವರ ಪಾಂ
ಡವರು ಕಣನೊಳು ವೆಂಠಣಿಸಿದರು ಕಮಠ ಟೆಂಠಣಿಸೆ

ಕೇಳು ಜನಮೇಜಯ ಧರಿತ್ರೀ
ಪಾಲ ಸಂಧಿಯ ಮುರಿದು ಲಕ್ಷ್ಮೀ
ಲೋಲನೈತರುತಿವರ ಹೊರೆಗಟ್ಟಿದನು ಸಾತ್ಯಕಿಯು
ಕೇಳಿದನು ಮುರಹರನ ಬರವನು
ಮೌಳಿಮಸ್ತಕದಖಿಳ ಧರಣೀ
ಪಾಲರೊಡನಿದಿರಾಗಿ ಬಂದನು ಧರ್ಮನಂದನನು ೧

ದೂರದಲಿ ದುಮ್ಮಾನಿಸಿದ ವದ
ನಾರವಿಂದವ ಕಂಡು ಸಂಧಿಗೆ
ಸೇರರವದಿರು ಬಲಿದುದಾಹವವೀತನಂಗದಲಿ
ಶೌರಿಗಾಯ್ತವಮಾನವಿದೆಲೇ
ಮಾರಿಗುತ್ಸವವೆನುತ ಬಂದನು
ಮಾರುತನ ಮಗನಸುರಮರ್ದನನಿಂಗಿತವನರಿದು ೨

ದರುಶನವ ನೀಡಿದರು ಕೃಷ್ಣನ
ಚರಣದಲಿ ಮೈಯಿಕ್ಕಿದರು ಮಿ
ಕ್ಕರಸುಗಳು ದ್ರುಪದಾದಿ ನಾಯಕರೆರಗಿದರು ಪದಕೆ
ಪರಮ ಬಾಂಧವರೆಲ್ಲ ಜೀವಂ
ತರೆ ನದೀಸುತ ವಿದುರ ಗುರು ನೃಪ
ಗುರುತನುಜ ಧೃತರಾಷ್ಟ್ರಯೆಂದನು ಧರ್ಮನಂದನನು ೩

ಭೂಮಿಪತಿ ನಿಜಬಾಂಧವರು ಸು
ಕ್ಷೇಮಿಗಳು ತಾವೆಲ್ಲ ನಿಮ್ಮಾ
ಕ್ಷೇಮ ಕುಶಲವ ಕೇಳಿದರು ಕಳುಹಿದರು ಹರಕೆಗಳ
ಆ ಮಹಾ ಸಂಗ್ರಾಮ ಮುಖದಲಿ
ತೋಮರದ ಕಾಣಿಕೆಗಳಲಿ ಸು
ಪ್ರೇಮವನು ಬೆಸಸುವುದು ದುರಿಯೋಧನನ ಮತವೆಂದ ೪

ಭೂಮಿಯೊಳಗರ್ಧವನು ಬೇಡಿದೊ
ಡಾ ಮಹೀಪತಿಯೈವರಿಗೆ ಸಂ
ಗ್ರಾಮ ಭೂಮಿಯನೈದೆ ಕೊಟ್ಟನು ನಿಮ್ಮೊಳಪ್ರಿಯನು
ಸಾಮದಲಿ ಸೊಗಸಿಲ್ಲ ನೀವ್ ನಿ
ಸ್ಸೀಮರಾದೊಡೆ ಜೋಡಿಸುವುದು
ದ್ದಾಮ ಕುರು ಭೂಮಿಯಲಿ ಕುಳವರಿದವರ ಪತಿಕರಿಸಿ ೫

ಮುನಿದೊಡೆಯು ನಿಮ್ಮೊಳಗೆ ನೀವೇ
ಮನಕತವ ಮಾಡುವಿರಿಯಗ್ರಜ
ರನುಜರಲಿ ಕದಡಾದೊಡುಪಶಮಿಸುವಿರಿ ನಿಮ್ಮೊಳಗೆ
ಎನಗೆ ನಿಮ್ಮಯ ದೂಸರಿಂದಾ
ಯ್ತಿನಿತು ಸಭೆಯಲಿ ಮಾನ ಹಾನಿಗ
ಳೆನಲು ನೊಂದನು ಧರ್ಮಸುತನಿಂತೆಂದ ನಸುನಗುತ ೬

ಮುಳಿದು ಸುರಗಿಯನುಗಿದು ಗಗನಕೆ
ನಿಲುಕಿ ಮಾಡುವದೇನು ನಿಮ್ಮಡಿ
ಗಳಿಗೆ ತಪ್ಪಿದ ತರಳರಖಿಳ ವ್ಯಾಪ್ತಿಗೇಗುವರು
ಖಳರು ಮಾಡಿದ ಖತಿಯನೆನ್ನೊಳು
ತಿಳಿದು ಮರೆಯಲುಬೇಕು ಕರುಣಾ
ಜಲಧಿ ನೀನೆಂದಂಘ್ರಿಗಳ ಹಿಡಿದನು ಯುಧಿಷ್ಠಿರನು ೭

ಬರಿದೆ ಕಾಡದಿರೇಳು ಮನದಲಿ
ಮರೆದೆವಾಗಳೆ ಕೌರವನು ಮುಂ
ದರಿಯದವಗಡಿಸಿದನು ಹೋಗಲಿ ನಿಮ್ಮ ದೂರೇಕೆ
ನೆರವಣಿಗೆಯುಂಟಾದಡಿಂದಿನ
ಮರುದಿವಸ ಸಂಗ್ರಾಮ ಸೈರಿಸ
ಲರಿಯರವದಿರು ನಡೆ ಕುರುಕ್ಷೇತ್ರಕ್ಕೆ ಬೇಗದಲಿ ೮

ಹಾನಿಯನು ನೀ ಹೊತ್ತು ಭೃತ್ಯರ
ಮಾನವನು ಪತಿಕರಿಸಬೇಹುದು
ತಾನೊಡೆಯನಾದಂಗೆ ಗುಣವೆಮ್ಮೊಡೆಯ ನೀನಾಗಿ
ಮಾನ ಭಂಗವ ಧರಿಸಿಯೆಮ್ಮಭಿ
ಮಾನವನು ನೀನುಳುಹಿದೈ ಸಂ
ಧಾನವನು ಸೇರಿಸದೆ ಸಲಹಿದೆಯೆಂದನಾ ಭೀಮ ೯

ಮಾರಿಯರಕೆಗಳಡಗದಂತಕ
ನೂರು ತುಂಬದೆ ಶಾಕಿನಿಯರೊಡ
ಲೋರೆ ನನೆಯದೆ ಡಾಕಿನಿಯರಿಗೆ ಡೊಳ್ಳು ಸಾಲಿಡದೆ
ಕೌರವನ ತನಿಗರುಳ ದಂಡೆಯು
ತೋರಣದ ಬಾಗಿಲಿನ ವಿಭವದಿ
ವಾರಣಾಹ್ವಯನಗರಿಯನು ಹೊಗದಿಹೆನೆ ಹೇಳೆಂದ ೧೦

ತೋರು ನಡೆ ಗಜಬುಜಿಸಲೇಕಿ
ನ್ನಾರು ತಿಂಗಳೆ ನಾಳೆ ಪಯಣಕೆ
ಸಾರಿಸೇಳೆಂದವರುಪಪ್ಲವ್ಯಕ್ಕೆ ನಡೆತಂದು
ಬೇರೆ ಬೇರವನೀಶರಿಗೆ ಪಡಿ
ಹಾರವನು ಕಳುಹಿದರು ಕೃಷ್ಣನ
ದೂರು ಬರಲಳವಡಿಸಿದರು ಸಂಗ್ರಾಮ ಸಾಧನವ ೧೧

ಗುಡಿಯ ಮಂಡವಿಗೆಗಳ ಹೊರಿಗೆಗ
ಳೊಡನೊಡನೆ ಸಂಭ್ರಮಿಸಿದವು ಬರ
ಸಿಡಿಲು ಬೊಬ್ಬಿಡುವಂತೆ ಮಸೆದವು ಕೂಡೆ ಕೈದುಗಳು
ದಡಿಯ ಬಲಿಸುವ ಗುಳವ ರೆಂಚೆಯ
ಗಡಣಿಸುವ ಬಲುಗೀಲಗಾಲಿಯ
ತೊಡಿಸುವುತ್ಸಹವಾಯ್ತುವರ ಪಾಂಡವರ ಬೀಡಿನಲಿ ೧೨

ಹಿಳುಕ ತಿದ್ದುವ ಬಿಲ್ಲ ಬಾಗಿನ
ಹೊಳಹನೊಯ್ಯಾರಿಸುವ ಮಾರ್ತಿರು
ಗಳನು ಜೋಡಿಸುವಖಿಳ ಕೈದುವ ಮಸೆವ ಮಂಡಲಿಯ
ಕಳಕಳಿಕೆ ಬಲುಹಾಯ್ತು ರಾವುತ
ರಲಿ ಗಜಾರೋಹಕರ ರಥಿಕಾ
ವಳಿಯಲವರವರಂಗದಲಿ ಸಂವರಣೆಯೊಪ್ಪಿದವು ೧೩

ಜೋಳಿ ಹರಿದುದು ದೆಸೆದೆಸೆಗೆ ಭೂ
ಪಾಲರಿಗೆ ರಾಯಸದ ಹದನನು
ಕೇಳಿದಾಗಳೆ ಕವಿದು ಬಂದರು ತಮ್ಮ ದಳಸಹಿತ
ಸೂಳವಿಸಿದವು ಸನ್ನೆಯಲಿ ನಿ
ಸ್ಸಾಳವಂದಿನ ಮರುದಿವಸ ವೈ
ಹಾಳಿಯನು ಹೊರವಂಟರನಿಬರು ದೈತ್ಯರಿಪು ಸಹಿತ ೧೪

ಎಲೆಲೆ ನೆಲ ಬೆಸಲಾದುದೋ ಬಲು
ದಳದ ತೆರಳಿಕೆ ಶೀವಿತವನಿಯ
ತಳಪಟದ ಹಬ್ಬುಗೆಯೊಳಬ್ಬರಿಸಿದವು ಬೊಬ್ಬೆಗಳು
ತಲೆವೊರೆಯ ತೂಕದಲಿ ಫಣಿಪತಿ
ಬಳುಕ ತೊಡಗಿದ ತರಣಿ ಸೇನೋ
ಜ್ವಲಿತ ಧೂಳಿಯ ಝುಗೆಯಲದ್ಭುತವಾಯ್ತು ದೆಖ್ಖಾಳ ೧೫

ಹಿಣಿಲ ಹಾಹೆಯ ಬಿರುದುಗಳ ಡಾ
ವಣಿಯ ನಾಯಕವಾಡಿಗಳ ಸಂ
ದಣಿಯ ಸುಕರದ ಕೈದುಗಳ ವರ ವೀರ ನೂಪುರದ
ಕುಣಿವ ಸುರಗಿಯ ಪಳಹರದ ಡೊಂ
ಕಣಿಯ ಭೇದಿಪ ಖಡ್ಗ ಬಿಲು ಬಲು
ಗಣೆಯಸಂಖ್ಯೆಯ ಕೈದುಗಳ ಕಾಲಾಳ ನೋಡಿದರು ೧೬

ಥಳಥಳಿಪ ಸೂನಿಗೆಯ ಮುಮ್ಮೊನೆ
ಗಳ ರಥಾಂಗದ ಮೇಲು ಪಸರದ
ಪಳಹರದ ಖುರಗತಿಯ ಜೋಡ ಜವಾಯ್ಲ ಕುದುರೆಗಳ
ಬಲದ ಬದ್ದರದೊಟ್ಟಿದಂಬಿನ
ಹೊಳೆವ ಹೊದೆಗಳ ಸೂತರುರವಣೆ
ಗಳ ಸುರೇಖೆಯ ಗತಿಯ ವಾಜಿಯ ರಥವ ನೋಡಿದರು ೧೭

ಅಳವಿಗೊಟ್ಟೊಡೆ ರವಿಯ ತುರಗವ
ನುಳುಹಿ ಮುಂಚುವ ಗತಿಯ ನೊಸಲಲಿ
ಹೊಳೆವ ಕನ್ನಡಿಗಳ ಖುರಾಂತದ ಜೋಡು ಚೆಲುವುಗಳ
ಬಿಳಿಯ ಚೌರಿಯ ಝಲ್ಲರಿಯ ಹ
ತ್ತಳದ ರಾವ್ತರ ಸರಿಸದಲಿ ನೆಲ
ನಲುಗೆ ನಿಗುರುವ ನಿಲುವ ನಿರುತದ ಹಯವ ನೋಡಿದರು ೧೮

ಶೈಲದೆಡಬಲದೊರತೆಯೆನೆ ಸುಕ
ಪೋಲದಲಿ ದಾರಿಡುವ ಮದಜಲ
ಧಾರೆಗಳ ಬರಿಕೈಯ ಲೌಡಿಯ ವಜ್ರ ಮುಷ್ಟಿಗಳ
ನಾಳಿವಿಲುಗಳ ರಾಯ ಜೋಧರ
ಮೇಳವಣೆಗಳ ಚಿತ್ರಗತಿ ಶುಂ
ಡಾಲವನು ನೋಡಿದರು ಗಜಸೇನಾ ಸಮುದ್ರದಲಿ ೧೯

ಅವನಿಪಾಲರ ಮಕುಟ ಮಣಿಗಣ
ನಿವಹವೆತ್ತಿದ ಖಡ್ಗ ಪರಶುಗ
ಳವಿರಳದ ತೆರೆಗಳ ಪತಾಕಾವಳಿಯ ಬೆಳುನೊರೆಯ
ವಿವಿಧ ಗಜ ಹಯ ಜಲಚರೌಘದ
ಪವನಜನ ಕೈಸನ್ನೆಗಳ ಘನ
ಪವನ ಹತಿಯಲಿ ಲಹರಿ ಮಸಗಿತು ಬಹಳ ಬಲಜಲಧಿ ೨೦

ಹರಿ ಯುಧಿಷ್ಠಿರರೊಂದು ಗಜ ಕಂ
ಧರದೊಳಿರ್ದರು ನಿಖಿಳ ಸೇನೆಯ
ತೆರಳಿಕೆಯ ತೋರಿಸುತ ಬಂದರು ಭೀಮ ಫಲುಗುಣರು
ಬಿರುದ ಧೃಷ್ಟದ್ಯುಮ್ನ ಮೊದಲಾ
ಗಿರೆ ಶಿಖಂಡಿಯು ಸಹಿತ ದ್ರುಪದನು
ಭರ ಮಿಗಿಲು ತೋರಿದನು ಮೂರಕ್ಷೋಣಿ ಸೇನೆಯನು ೨೧

ವರ ಯುಧಾಮನ್ಯೂತ್ತಮೌಂಜಸ
ನುರು ಶಿಖಂಡಿ ಸುಚೇಕಿತಾನರು
ಧುರಧುರಂಧರ ವೀರ ಪಾಂಚಾಲ ಕ್ಷಿತೀಶ್ವರರು
ತುರುಕರನು ಸಾಹಣ ಸಮುದ್ರರ
ಮರುಯವನ ಖುರಸಾಣ ಕಾಶೀ
ಶ್ವರರ ಥಟ್ಟನು ತೋರಿದನು ಪಾಂಚಾಲ ಭೂಪಾಲ ೨೨

ವರ ವಿರಾಟನು ಶಂಖ ನೃಪನು
ತ್ತರ ಶತದ್ಯುಮ್ನಕನು ಶತಚಂ
ದ್ರರು ಶತಾನೀಕರು ಶತಾಯುಧರೆನಿಪ ನೃಪವರರು
ತುರಗ ಗಜರಥ ಪಾಯದಳ ಸಾ
ಗರದ ಸೌರಂಭದಲಿ ನಿಜ ಸಂ
ವರಣೆಯನು ತೋರಿದರು ತಮ್ಮಕ್ಷೋಹಿಣೀ ದಳವ ೨೩

ಜಯಸಮರ ಸಾಮಗ್ರ ಬಲ ಕೈ
ಕೆಯ ನೃಪಾಲರು ತಮ್ಮೊಳಕ್ಷೋ
ಣಿಯನು ತೋರಿದರೈವರಿಭಕಂದರದ ಭೂಪತಿಗೆ
ಭಯವಿಹೀನನು ಪಾಂಡ್ಯ ನೃಪ ಸೃಂ
ಜಯರು ಸೋಮಕ ಭೂಪರಕ್ಷೋ
ಣಿಯನು ತೋರಿದರವನಿ ಕುಸಿದುದು ದಳದ ಪದಹತಿಗೆ ೨೪

ಚೈದ್ಯ ದೇಶದ ಧೃಷ್ಟಕೇತು ಬ
ಲೋದಧಿಯನಕ್ಷೋಹಿಣಿಯ ಮೊದ
ಲಾದುದೆನೆ ತೋರಿದನು ಕುಂತೀಭೋಜನಕ್ಷೋಹಿಣಿ
ಆದವೇಳಕ್ಷೋಹಿಣಿ ಬಲ ಬೇ
ರಾದ ನಾಯಕವಾಡಿಯಲಿ ಹಿರಿ
ದಾದುದಾಹವ ಸೇನೆ ಗೋಚರವಲ್ಲ ಗಣನೆಯಲಿ ೨೫

ಕ್ಷತ್ರಧರ್ಮನು ನೀಲನು ಬೃಹ
ತ್ಕ್ಷತ್ರ ಶೌರಿಯ ತನುಜ ವತ್ಸಜ
ಚಿತ್ರವರ್ಮ ಹಿರಣ್ಯವರ್ಮನು ಚಾರು ಚೇಷ್ಟಕನು
ಶತ್ರುಮಥನನು ವಿಂಧ್ಯಗಿರಿಯ ಸು
ಹೋತ್ರರನ್ವಯದವರು ಪಾಂಡವ
ಮಿತ್ರರೊದಗಿತು ಕೇಳು ಜನಮೇಜಯ ಮಹೀಪಾಲ ೨೬

ವೀರ ಪಾರ್ಥನಿಗಿರುಳು ಸೋತಂ
ಗಾರವರ್ಮನು ಗಗನಚರ ಪರಿ
ವಾರ ಬಹಳದಿ ಬಂದು ಕಂಡನು ಕಲಿಯುಧಿಷ್ಠಿರನ
ಕೌರವೇಂದ್ರನ ನೋಯಿಸಿದ ಧುರ
ಧೀರ ಸಾಹಸ ಚಿತ್ರಸೇನನು
ದಾರ ಗುಣನಿಧಿ ಬಂದು ಕಂಡನು ಮಿತ್ರಭಾವದಲಿ ೨೭

ಕಾರಿರುಳ ಪಟ್ಟಣಕೆ ಚಂದ್ರನ
ತೋರಣವ ಬಿಗಿದಂತೆ ದಾಡೆಗ
ಳೋರಣದ ಹೊಳಹುಗಳ ಹೊಗರಿಡುವೊಡಲ ಕಪ್ಪುಗಳ
ಭಾರಿ ದೇಹನು ಭಟಭಯಂಕರ
ತೋರಹತ್ತನು ದೈತ್ಯಕುಲ ಪರಿ
ವಾರ ಬಹಳದಿ ಬಂದು ಕಂಡನು ಕಲಿಘಟೋತ್ಕಚನು ೨೮

ಬಲದ ದೆಖ್ಖಾಳವನು ನೋಡಿದ
ರೊಲವಿನಲಿ ನಿಜಸೇನೆ ಸಹಿತತಿ
ಬಲರುಪಪ್ಲವ್ಯಕ್ಕೆ ಬಂದರು ಹೊಕ್ಕರಾಲಯವ
ಬಳಿಕ ಸುಮುಹೂರ್ತದಲಿ ಹೊರಗುಡಿ
ಗಳನು ಹಾಯ್ಕಿದರಂದು ಯದುಕುಲ
ತಿಲಕ ಗದುಗಿನ ವೀರ ನಾರಾಯಣನ ನೇಮದಲಿ ೨೯

ಪರಿಮಿತಕೆ ತನ್ನಾಪ್ತ ಸಚಿವರ
ಕರೆಸಿಕೊಂಡನು ಕೃಷ್ಣರಾಯಂ
ಗರಸ ಬಿನ್ನಹ ಮಾಡಿದನು ನೃಪಕಾರ್ಯ ಸಂಗತಿಯ
ಧುರಕೆ ಸೇನಾನಾಥರಿಲ್ಲದೆ
ನೆರೆದ ಬಲ ಸಾಲಿರುಹೆ ಮುರಿದೊಡೆ
ಹರೆವವೊಲು ಹುರುಳಿಲ್ಲ ದಳಪತಿ ಯಾವನಹನೆಂದ ೩೦

ದ್ರುಪದನಾಗಲಿಯೆಂದು ಕೆಲಬರು
ವಿಪುಳ ಬಲದ ವಿರಾಟನಾಗಲಿ
ನೃಪ ಶಿಖಂಡಿಯೆಯೆಂದು ಕೆಲಬರು ಭೀಮಸುತನೆಂದು
ಅಪರಿಮಿತಮತವಾಗೆ ಸಮರ
ವ್ಯಪಗತಾರಿ ಸುರೇಂದ್ರಸುತನೀ
ದ್ರುಪದಸುತ ಸೇನಾಧಿಪತಿಯಹುದೆಮ್ಮ ಮತವೆಂದ ೩೧

ಬಿಂಬವನು ಬೇರಿರಿಸಿ ಬಹುಮತ
ವೆಂಬ ಬಿಸಿಲಲಿ ರಾಜ ನಯವೆಂ
ದೆಂಬ ನೈದಿಲು ನಲವುಗೆಟ್ಟುದು ಕೃಷ್ಣ ಹೇಳೆನಲು
ಎಂಬುದೇನಿನ್ನಿಲ್ಲಿ ಸುಭಟ ಕ
ದಂಬದಧಿಪತಿತನಕೆ ಫಲುಗುಣ
ನೆಂಬ ಮಾತೆಮ್ಮಭಿಮತವು ಭೂಪಾಲ ಕೇಳೆಂದ ೩೨

ಕರೆಸಿ ಧೃಷ್ಟದ್ಯುಮ್ನನನು ಸಂ
ಗರದ ಸೇನಾಪತ್ಯವನು ವಿ
ಸ್ತರಿಸಲಳವಡಿಸಿದರು ಸುಮುಹೂರ್ತದ ಸರಾಗದಲಿ
ಪುರದೊಳಗೆ ಗುಡಿ ನೆಗಹಿದವು ಭೂ
ಸುರರ ವಿಮಳಾಮ್ನಾಯ ರವ ವಿ
ಸ್ತರಿಸಲಳವಡಿಸಿದರು ಮಂಗಳ ವಿಹಿತ ವಸ್ತುಗಳ ೩೩

ಸೂಳವಿಸಿದವು ಕಟಕದಲಿ ನಿ
ಸ್ಸಾಳ ಕೋಟಿಗಳಳ್ಳಿರಿಯೆ ಹೆ
ಗ್ಗಾಳೆಗಳು ಸಾರಿದವು ಭಟರುಬ್ಬಟೆಯ ಬಿರುದುಗಳ
ಲೋಲನಯನೆಯರಾರತಿಯ ಸಮ
ಸಾಲು ಸಂದಣಿಸಿದವು ವರ ಪಾಂ
ಚಾಲತನಯಂಗೆಸಗಿದರು ಮೂರ್ಧಾಭಿಷೇಚನವ ೩೪

ದರುಶನವನಿತ್ತಖಿಳ ಧರಣೀ
ಶ್ವರರು ಕಂಡರು ಸೂತ ಮಾಗಧ
ವರ ವಿಬುಧ ವೈತಾಳಿಕರ ಕಾರ್ಪಣ್ಯವಡಗಿದವು
ಧುರಕೆ ಧೃಷ್ಟದ್ಯುಮ್ನನಾಜ್ಞೆಯೊ
ಳಿರವು ನಿಮಗೆಂದೈದೆ ಭೂಪಾ
ಲರ ನಿವಾಸಂಗಳಲಿ ಹೊಯಿದರು ಚರರು ಡಂಗುರವ ೩೫

ರೂಢಿಸಿದ ಸುಮುಹೂರ್ತದಲಿ ಹೊರ
ಬೀಡಬಿಟ್ಟರು ರಣಕೆ ಪಯಣವ
ಮಾಡಲೋಸುಗ ಸಾರಿದರು ನೃಪ ಪಾಳೆಯಂಗಳಲಿ
ಕೂಡಿತಾಹವ ಸೈನ್ಯ ಸಾಗರ
ವೀಡಿರಿದು ನಡೆಗೊಂಡುದಭ್ರದ
ರೂಢಿಗಳ ಜೋಡಿಗಳ ಜೋಕೆಯ ಘನ ತರಂಗದಲಿ ೩೬

ಹರಿಯ ಚರಣಕ್ಕೆರಗಿ ವಿಜಯದ
ಹರಕೆಗಳ ಕೈಕೊಂಡು ರಥವನು
ತುರಗ ಗಜವನು ಗಡಣ ಮಿಗಲಡರಿದರು ಪಾಂಡವರು
ಗರುಡ ಸಿಂಧವ ನೆಗಹಿ ದಾರುಕ
ನಿರದೆ ರಥವನು ಸುಳಿಸೆ ಘನ ಮೋ
ಹರದ ಮಧ್ಯದೊಳಸುರಧೂಳೀಪಟನು ಹೊರವಂಟ ೩೭

ಮುಂದೆ ಹರಿರಥ ನಡೆಯಲಾತನ
ಹಿಂದೆ ಧರ್ಮಜನೆಡ ಬಲದಲಾ
ನಂದನರು ಕೆಲಬಲದಲಾ ಭೀಮಾರ್ಜುನಾದಿಗಳು
ಸಂದಣಿಸಿದುದು ಸೇನೆ ಸೈರಿಸಿ
ನಿಂದನಾದೊಡೆ ಫಣಿಗೆ ಸರಿಯಿ
ಲ್ಲೆಂದು ಸುರಕುಲ ವುಲಿಯೆ ನಡೆದುದು ಪಾಂಡುಸುತ ಸೇನೆ ೩೮

ಸಿಡಿಲು ಸಿಗುರೆದ್ದಂತೆ ಭಾರಿಸಿ
ಜಡಿದ ಕೈದುಗಳುಗಿದವಬುಧಿಯ
ಕೆಡುದೆರೆಯ ಲಹರಿಯವೊಲುರವಣಿಸಿದವು ಬೊಬ್ಬೆಗಳು
ನಡುಗಿತವನಿಯಜಾಂಡ ಖರ್ಪರ
ವೊಡೆಯಲವನಿಯ ಲಗ್ಗೆ ಸೂಳಿನ
ಹೊಡೆಗುಳಿನೊಳಬ್ಬರಿಸಿದವು ನಿಸ್ಸಾಳ ಕೋಟಿಗಳು ೩೯

ಪ್ರಳಯ ಜಲನಿಧಿಯಂತೆ ದಳ ಬರ
ಲಿಳೆ ಕುಸಿಯೆ ಕಮಠಂಗೆ ಮೇಲುಸು
ರುಲಿಯೆ ದಿಗುದಂತಿಗಳು ಮೊಣಕಾಲೂರಿ ಮನಗುಂದೆ
ಬಲಮಹಾಂಬುಧಿ ಬಲುಗಡಲ ಮು
ಕ್ಕುಳಿಸಿ ನಡೆದುದು ಕಡು ಭರದ ಕಾ
ಲ್ದುಳಿಯ ಕದನಾಳಾಪಕರ ಕಾಹುರತೆ ಹೊಸತಾಯ್ತು ೪೦

ಗಜದ ಬೃಂಹಿತ ರವದ ವಾಜಿ
ವ್ರಜದ ಹೇಷಧ್ವನಿಯ ತೇರಿನ
ವಿಜಯ ಚೀತ್ಕೃತಿ ರವದ ಬಿಲು ಟಂಕಾರ ಕಳಕಳದ
ಗಜಬಜಿಕೆ ಗಾಢಿಸಿತು ಬೊಬ್ಬೆಯ
ಗಜರುಗಳ ಗರ್ಜನೆಗೆ ನಡುಗಿತು
ತ್ರಿಜಗವೆನಲೈದಿದರು ಪಯಣದ ಮೇಲೆ ಪಯಣದಲಿ ೪೧

ಅರರೆ ನಡೆದುದು ರಾಯ ಕಟಕದ
ತೆರಳಿಕೆಯ ಸೌರಂಭವಿಳೆಗ
ಚ್ಚರಿಯ ಬೀರಿತು ವರ ಕುರುಕ್ಷೇತ್ರಕ್ಕೆ ಗಮಿಸಿದರು
ಅರಿವಿಜಯಿಗಳು ನೆಲನ ಗೆಲಿದರು
ಹರಿಯ ನೇಮದಲೆಡೆಯರಿದು ಬಲ
ಶರಧಿ ಬಿಟ್ಟುದು ಕಳನ ಪಶ್ಚಿಮ ದೆಸೆಯ ಪಸರದಲಿ ೪೨

ಸೂಳವಿಸಿದವು ಸನ್ನೆಯಲಿ ನಿ
ಸ್ಸಾಳ ಲಗ್ಗೆಗಳಡಗಿದವು ಕಿರು
ಗಾಳೆ ಸನ್ನೆಯಲೂದಿದವು ಮಾಣಿಸಿದವಬ್ಬರವ
ಕೇಳು ಜನಮೇಜಯ ಧರಿತ್ರೀ
ಪಾಲ ಮಾರ್ಗಶ್ರಮದ ಸೇನಾ
ಜಾಲ ಸೈವೆರಗಾಗಿ ನಿಂದುದು ಕಳನ ಮಧ್ಯದಲಿ ೪೩

ಮೇಲು ಗುಡಿಗಳ ಭದ್ರದುಪ್ಪರ
ಶಾಲೆಗಳ ಮಂಡವಿಗೆಗಳ ಬ
ಲ್ಲಾಳದಡ್ಡಿಯ ಚಂಪೆಯದ ಗೂಡಾರದೋವರಿಯ
ಸಾಲು ಕಳಸದ ಮೇಲುಗಟ್ಟಿನ
ಕೀಲಣದ ಹೊಂಗೆಲಸದಲಿ ರಾ
ಜಾಲಯವನನುಕರಿಸಿದರು ಕುಂತೀ ಕುಮಾರರಿಗೆ ೪೪

ಅರಮನೆಯ ಕೆಲದಲಿ ಮುರಾಂತಕ
ನರಮನೆಗಳಾ ಕೆಲದೊಳರ್ಜುನ
ನಿರವು ಹಿಂದಣ ಭಾಗದಲಿ ನಕುಲಂಗೆ ಗೂಡಾರ
ಅರಿಭಯಂಕರ ಭೀಮಸೇನನ
ನಿರುಪಮಾಲಯವೆಡದ ಕಡೆಯಲಿ
ಸರಿಸದಲಿ ಸೂತ್ರಿಸಿತು ಸಹದೇವಂಗೆ ನೃಪಭವನ ೪೫

ವೀರ ಪಾಂಡವರೈವರರಸು ಕು
ಮಾರ ವರ್ಗದ ಮಂಡವಿಗೆ ಗೂ
ಡಾರಗಳನೊಳಕೊಂಡು ಬಿಗಿದವು ತಳಿಯ ಕಟ್ಟುಗಳು
ವಾರಣದ ಸಾಲುಗಳ ಸುತ್ತಲು
ಭಾರಿಸಿತು ಪಾಂಚಾಲ ಮತ್ಸ್ಯರ
ಭೂರಿ ಬಲಬಿಟ್ಟುದು ಮಹೀಶನ ಗುಡಿಯ ಬಳಸಿನಲಿ ೪೬

ಕೇಳು ಜನಮೇಜಯ ಧರಿತ್ರೀ
ಪಾಲ ಬೀಡಿನ ತೆಕ್ಕೆ ಬಿಗಿದುದು
ಪಾಳೆಯದ ಬಲುಹೊದಕೆ ಹೊರವಳಯದಲಿ ಕಲುಗೋಟೆ
ಮೇಲೆ ಪಡಿಯಗಳಾಶ್ರಯಿಕೆ ಮುಳು
ವೇಲಿ ದೀಹದ ಸಿಂಹ ಶರಭ
ವ್ಯಾಳ ಶಾರ್ದೂಲಾವಳಿಯ ಸುಯಿಧಾನವೊಪ್ಪಿದವು ೪೭

ಎರಡು ಬಾಗಿಲ ಸೂತ್ರದಲಿ ವಿ
ಸ್ತರಿಸಿದಂಗಡಿ ಸೋಮವೀಧಿಯ
ತರಣಿವೀಧಿಯಲವರವರ ಪಾಳೆಯಕೆ ಮುರಿವುಗಳ
ಸುರರು ಸೃಷ್ಟಿಸಬಾರದಿನ್ನೀ
ನರರುಗಳ ಪಾಡೇನು ಕೌಂತೇ
ಯರ ಸಮಗ್ರದ ಬೀಡು ಕುರುಭೂಮಿಯಲಿ ರಂಜಿಸಿತು ೪೮

ಬಲದ ಮುಂಗುಡಿ ಭೀಮನದು ಹಿಂ
ಗಳಿಯಲಾತನ ಕಾಹು ಬೀಡಿನ
ವಳಯದಾರೈಕೆಗಳು ಸಾತ್ಯಕಿ ಪಾರ್ಥ ನಕುಲರಿಗೆ
ಬಲಮಹಾಂಬುಧಿಯೊಳಗಿರುಳ ತರ
ವಳಿಕೆ ಹೈಡಿಂಬಂಗೆ ಪಾಂಡವ
ರುಳಿವು ಗದುಗಿನ ವೀರನಾರಾಯಣನ ಸುಯಿದಾನ ೪೯

ಇತಿ ಶ್ರೀಮದಚಿಂತ್ಯಮಹಿಮ ಗದುಗು ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನಪರಿಪುಷ್ಟ ವಚಃಷಟ್ಪದೀ ನಿಕಾಯ
ಶ್ರೀಮತ್ಕುಮಾರವ್ಯಾಸಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಉದ್ಯೋಗಪರ್ವ ಸಮಾಪ್ತಮಾದುದು.

ಭೀಷ್ಮ ಪರ್ವ

ಮೊದಲನೆಯ ಸಂಧಿ

ಸೂ. ವೈರಿ ಭಟಕುಲ ವಿಲಯ ರುದ್ರನು
ದಾರತೇಜೋಭದ್ರನಾ ಭಾ
ಗೀರಥೀಸುತ ಧರಿಸಿದನು ಕುರುಸೇನೆಯೊಡೆತನವ

ಕೇಳು ಜನಮೇಜಯ ಧರಿತ್ರೀ
ಪಾಲ ಕೌರವರಾಯನಲ್ಲಿಗೆ
ಕಾಳೆಗದ ಕಾತರಿಗರಿವರಟ್ಟಿದರು ಭಟ್ಟರನು
ಕೇಳಿದನು ಕುರುಭೂಮಿಯಲಿ ರಿಪು
ಜಾಲದುದಯವನಂದು ಕುರುಕುಲ
ಮೌಳಿ ಕರೆಸಿದನಾಪ್ತರನು ಪರಿಮಿತಕೆ ಮಂತ್ರಿಗಳ ೧

ರವಿಜ ಗುರುಸುತ ಶಲ್ಯ ಕಲಶೋ
ದ್ಭವರು ಸೌಬಲರಾದಿಯಾದವ
ರವನಿಪಾಲನ ಕಂಡರಂದೇಕಾಂತ ಭವನದಲಿ
ಅವನಿಪತಿ ಹದನೇನು ರಿಪುಪಾಂ
ಡವರ ಬೀಡಿನ ಗುಪ್ತದನುಮಾ
ನವನು ಚಿತ್ತಯಿಸಿದರೆ ಬೆಸಸುವುದೆನಲು ನೃಪ ನುಡಿದ ೨

ಸಂದಣಿಸಿ ಕುರುಭೂಮಿಯಲಿ ತಾ
ಮಂದಿ ಬಿಟ್ಟುದು ನಾಡ ಗಾವಳಿ
ಬಂದುದಲ್ಲಿಗೆ ಕಳುಹಿದರು ದೂತರನು ದುರ್ಜನರು
ನಂದಗೋಪನ ಮಗನ ಕೊಂಡೆಯ
ದಿಂದ ಕಲಿಯೇರಿದರು ಕೃಪಣರ
ಕೊಂದಡಹುದಪಕೀರ್ತಿಯಿದಕಿನ್ನೇನು ಹದನೆಂದ ೩

ಭೂರಿ ನೆರೆದುದು ನಾಡ ಗಾವಳಿ
ಭಾರ ಧೃಷ್ಟದ್ಯುಮ್ನನದು ಗಡ
ಚಾರದೇವನ ಜೋಕೆ ಮಂದಿಯ ಕಾಹು ಕಟ್ಟು ಗಡ
ಧಾರುಣಿಯ ಲಂಪಟರು ಕದನವ
ಹಾರಿ ಬಂದರು ಗಡ ಕೃತಾಂತನ
ಭೂರಿ ಭೂತದ ಧಾತುವಾಯಿತು ಲೇಸು ಲೇಸೆಂದ ೪

ನಾಡ ಮನ್ನೆಯ ಗಿನ್ನೆಯರುಗಳ
ಕೂಡಿಕೊಂಡೆಮ್ಮೊಡನೆ ಕಲಹವ
ಬೇಡಿ ಮಹಿಪಾಲನೆಯ ಪಟ್ಟಕೆ ನೊಸಲನೊಡ್ಡುವರು
ನೋಡಿರೈ ನಿರುಪಮವಲಾ ಕಾ
ಡಾಡಿಗಳ ಕಲಿತನವನೆನೆ ಮಾ
ತಾಡಿದನು ಕಲಿಕರ್ಣನಾತನ ಮನದ ಮೈಸಿರಿಯ ೫

ನೆರೆದ ದೊದ್ದೆಯನೊರಸಬಹುದೇ
ನರಿದು ಜೀಯ ವಿರೋಧಿರಾಯರ
ನೆರವಿ ತಾನೇಗುವುದು ಗಹನವೆ ನಿನ್ನ ವೀರರಿಗೆ
ಕರಿಗಳಿಗೆ ಪ್ರತ್ಯೇಕವಿವೆ ಕೇ
ಸರಿಗಳೆಮ್ಮನು ಕಳುಹು ನಿಮ್ಮಡಿ
ಪರಿಮಿತಕೆ ಬರಲಾವ ಭಾರವಿದೆಂದನಾ ಕರ್ಣ ೬

ಕಲಕುವೆನು ಪಾಂಡವರ ಸೇನಾ
ಜಲಧಿಯನು ತೇರಿನಲಿ ತಲೆಗಳ
ಕಳುಹುವೆನು ಕದನದಲಿ ಕೈದೋರಿದ ಕುಠಾರಕರ
ಹೊಳಲ ಹೊರಶೂಲದಲಿ ರಿಪುಗಳ
ಸೆಳಸುವೆನು ತಾ ವೀಳೆಯವನೆಂ
ದಲಘುಭುಜಬಲ ಕರ್ಣ ನುಡಿದನು ಕೌರವೇಂದ್ರಂಗೆ ೭

ಕುಲಿಶ ಪರಿಯಂತೇಕೆ ನೇಗಿಲ
ಬಳಿಯ ಹುಲುವೆಟ್ಟಕೆ ವಿರೋಧಿಗ
ಳಳಿಬಲಕೆ ಕಲಿಕರ್ಣ ನೀ ಪರಿಯಂತ ಸಂಗರವೆ
ಹೊಳಲ ಪರಿವಾರಕ್ಕೆ ಸಾರಿಸು
ಕೆಲಬಲದ ರಾಯರಿಗೆ ದೂತರ
ಕಳುಹಿ ನೆರಹಿಸು ಕಾದಿಸೆಂದನು ಕೌರವರ ರಾಯ ೮

ಮೂಗಿನಲಿ ಬೆರಳಿಟ್ಟು ಮಕುಟವ
ತೂಗಿದನು ಚತುರಂಗಬಲವನು
ಬೇಗದಲಿ ಕೊಳುಗುಳಕೆ ಕಳುಹಿಸು ಗೆಲಿಸು ಕಾಳೆಗವ
ತಾಗಿ ಬಾಗದ ಮರುಳುತನದು
ದ್ಯೋಗವಿದಕೇನೆಂಬೆನಕಟಕ
ಟೀಗಲದ್ದುದು ಕೌರವಾನ್ವಯವೆಂದನಾ ದ್ರೋಣ ೯

ಹಿಂದೆ ಗಳಹುವನಿವನು ಬಾಯಿಗೆ
ಬಂದ ಪರಿಯಲಿ ಪಾಂಡುತನಯರ
ಕೊಂದನಾಗಳೆ ಕರ್ಣನಿನ್ನಾರೊಡನೆ ಸಂಗ್ರಾಮ
ಹಿಂದೆ ಹಮ್ಮಿದ ಸಮರದೊಳು ನಡೆ
ತಂದು ಖೇಚರನಡಸಿ ಕಟ್ಟಿದ
ಡಂದು ನಿನ್ನನು ಬಿಡಿಸಿದವನರ್ಜುನನೋ ರವಿಸುತನೋ ೧೦

ಸಾಹಸಿಗಳಿಲ್ಲಿಲ್ಲ ಹರಿ ತುರು
ಗಾಹಿ ಪಾಂಡವರೈವರಡವಿಯ
ಮೋಹುಗಾರರು ಬಂದ ಭೂಭುಜರೆಲ್ಲ ತಾ ನೆರವಿ
ಆಹವಕೆ ನಿನ್ನೂರ ತಳವರ
ಗಾಹಿನವರನು ಕಳುಹುವುದು ಸಂ
ದೇಹವೇ ನೀನಿಲ್ಲಿ ಸುಖದಲಿ ರಾಜ್ಯ ಮಾಡೆಂದ ೧೧

ಎಲೆ ಸುಯೋಧನ ಕಾಳುಗೆಡೆದರೆ
ಫಲವನಿದರಲಿ ಕಾಣೆನಹಿತರ
ಬಲದ ಭಾರಣೆ ಬಿಗುಹು ಭೀಮಾರ್ಜುನರು ಬಲ್ಲಿದರು
ನಳಿನನಾಭನ ಮಂತ್ರಶಕ್ತಿಯು
ಬಲುಹು ನೀವ್ ನಿರ್ದೈವರವರ
ಗ್ಗಳ ಸದ್ದೈವರು ಕೆಟ್ಟಿರಿನ್ನೇನೆಂದನಾ ದ್ರೋಣ ೧೨

ಅಸುರರಿಪುವಿನ ಮಾತ ನೀ ಮ
ನ್ನಿಸದೆ ಕೌರವಕುಲವನದ್ದಿದೆ
ನುಸಿಗಳಿವದಿರು ಮುನಿದು ಪಾರ್ಥನನೇನ ಮಾಡುವರು
ಅಸುರರಲಿ ಸುರರಲಿ ಭುಜಂಗ
ಪ್ರಸರದಲಿ ಭೀಮಾರ್ಜುನರ ಸೈ
ರಿಸುವರುಂಟೇ ಕೆಟ್ಟಿರಿನ್ನೇನೆಂದನಾ ದ್ರೋಣ ೧೩

ಅವರಿಗಸುರಾಂತಕ ಸಹಾಯನು
ನಿವಗೆ ಗಂಗಾಸುತನ ಬಲವಾ
ಹವವನೀತನ ನೇಮದಲಿ ನೆಗಳುವುದು ನೀತಿಯಿದು
ಅವರಿವರ ಮಾತಿನಲಿ ಫಲವಿ
ಲ್ಲವನಿಪತಿ ಕೇಳೆನಲು ಕಲಶೋ
ದ್ಭವನ ಮತದಲಿ ಬಳಿಕ ಮಣಿದನು ಕೌರವರ ರಾಯ ೧೪

ಮತವಹುದು ತಪ್ಪಲ್ಲ ಗಂಗಾ
ಸುತನ ತಿಳುಹುವ ವೀರಪಟ್ಟವ
ನತುಳ ಬಲ ಭೀಷ್ಮಂಗೆ ಕಟ್ಟುವೆನೆನುತ ಕುರುರಾಯ
ಮತದ ನಿಶ್ಚಯದಿಂದ ಗುರು ಗುರು
ಸುತನ ಕಳುಹಿದನಿತ್ತಲಬುಜ
ಪ್ರತತಿಯುತ್ಸವಡಗೆ ಪಡುವಣ ಕಡಲೊಳಿನನಿಳಿದ ೧೫

ವಿನುತ ಸಂಧ್ಯಾದೇವಿಗಭಿವಂ
ದನ ಜಪಾದಿ ಸಮಸ್ತ ದೇವಾ
ರ್ಚನೆಯ ಮಾಡಿಯೆ ರವಿತನೂಜನ ಕರಸಿ ಪಂತಿಯಲಿ
ಜನಪನಾರೋಗಿಸಿದನಾಪ್ತಾ
ವನಿಪ ಸಚಿವರು ಸಹಿತ ಭೀಷ್ಮನ
ಮನೆಗೆ ಬಂದನು ಕೌರವೇಶ್ವರನಂದಿನಿರುಳಿನಲಿ ೧೬

ಮುಂದೆ ಹರಿದರು ಕೈಯ ಕಂಬಿಯ
ಸಂದಣಿಯ ಹಡೆವಳರು ಗಂಗಾ
ನಂದನಂಗೀ ಹದನನರುಹಲು ಬಂದನಿದಿರಾಗಿ
ಕಂದುಮೋರೆಯ ರಾಯನನು ತೆಗೆ
ದಂದು ಮದೊಳಾಲಿಂಗಿಸುತ ನಲ
ವಿಂದ ಮನ್ನಿಸಿ ತಂದನರಮನೆಗುಚಿತವಚನದಲಿ ೧೭

ಏನಿರುಳು ನೀ ಬಂದ ಹದನೆಲೆ
ಮಾನನಿಧಿ ಬೇಕಾದರೆಮ್ಮನು
ನೀನು ಕರೆಸುವುದರುಹುವುದು ನಿಜಕಾರ್ಯ ಸಂಗತಿಯ
ಏನ ಹೇಳುವೆ ನಗೆಯನನುಸಂ
ಧಾನದಲಿ ಪಾಂಡವರು ಕುರುಭೂ
ಮೀನಿವಾಸಕೆ ಬಂದು ಬಿಟ್ಟರು ಕಿರಿದು ದಳಸಹಿತ ೧೮

ಹರಿಯ ಹಿಸುಣಿಕೆಯವರ ಚಿತ್ತವ
ಬೆರಸಿ ವೈರವ ಬೆಳಸಿ ಬಂದರು
ಧರೆಯ ಭಾಗವ ಬೇಡಿ ಕದನವ ಮಸೆದರೆಮ್ಮೊಡನೆ
ಹರನ ಸಮದಂಡಿಗಳು ನೀವೆಮ
ಗಿರಲು ಜಯಿಸುವ ವೀರನಾವನು
ಮರುಳುತನವನು ಧರ್ಮಪುತ್ರನೊಳರಿಯಲಾಯ್ತೆಂದ ೧೯

ಬಂದರೇ ಪಾಂಡವರು ಸುದ್ದಿಯ
ತಂದರೇ ನಿನ್ನವರು ನಿನಗೇ
ನೆಂದು ಭಾಷೆಯ ಕೊಟ್ಟರೀ ಕರ್ಣಾದಿ ನಾಯಕರು
ಇಂದು ಸಂತತಿ ಗುರುವರಲ್ಲಾ
ಬಂದರೇನಪರಾಧವೇ ಇ
ನ್ನೆಂದು ಪರಿಯಂತವರು ನವೆವರು ಎಂದನಾ ಭೀಷ್ಮ ೨೦

ಜಗದ ಗುರುವಲ್ಲಾ ಮುರಾಂತಕ
ನಗಣಿತೋಪಮಮಹಿಮನಲ್ಲಾ
ಸಗುಣ ನಿರ್ಗುಣನಾ ಮಹಾತ್ಮನನಂತ ರೂಪವನು
ವಿಗಡಿಸಲು ಜಯವಹುದೆ ಜಾಣರ
ಬಗೆಗೆ ಬಹುದೇ ನಿನ್ನ ಮತವೆಲೆ
ಮಗನೆ ಮರುಳಾದೈ ಮದಾಂಧರ ಮಾತುಗಳ ಕೇಳಿ ೨೧

ಮಿಕ್ಕ ಮಾತೇಕಿನ್ನು ನೀ ಹಿಂ
ದಿಕ್ಕಿ ಕೊಂಬರೆ ಕೊಲುವನಾವನು
ಮಕ್ಕಳಾವೆನಬೇಡ ಬಲ್ಲೆವು ನಿನ್ನ ವಿಕ್ರಮವ
ಹೊಕ್ಕು ಹಗೆಗಳ ಹೊಯ್ದು ದಿಗುಬಲಿ
ಯಿಕ್ಕಿ ನನ್ನಯ ಹರುಷಜಲಧಿಯ
ನುಕ್ಕಿಸಲು ಬೇಕೆನಲು ಕೇಳಿದು ಭೀಷ್ಮನಿಂತೆಂದ ೨೨

ದೈವಬಲವವರಲ್ಲಿ ನೀವೇ
ದೈವಹೀನರು ಧರ್ಮಪರರವ
ರೈವರೂ ಸತ್ಪುರುಷಶೀಲರು ನೀವಧಾರ್ಮಿಕರು
ಮುಯ್ವನಾನುವುದವರ್ಗೆ ಭುವನವು
ಬೈವುದೈ ನಿಮ್ಮನಿಬರನು ನಿಮ
ಗೈವಡಿಯ ಸಹಸಿಗಳವರು ದುರ್ಬಲರು ನೀವೆಂದ ೨೩

ದಯವನತ್ತಲು ತಿದ್ದಿ ನಮ್ಮನು
ಭಯಮಹಾಬ್ಧಿಯೊಳದ್ದಿ ಸಮರದ
ಜಯವನವರಿಗೆ ಮಾಡಿ ನಮ್ಮಭಿಮತವ ನೀಗಾಡಿ
ನಯವ ನೀವೊಡ್ಡುವರೆ ನಿಮ್ಮನು
ನಿಯಮಿಸುವರಾರುಂಟು ಭಾಗ್ಯೋ
ದಯವಿಹೀನನು ತಾನೆನುತ ಕುರುರಾಯ ಬಿಸುಸುಯ್ದ ೨೪

ಉಚಿತವನು ನಾನರಿಯೆ ಪಾರ್ಥಕ
ರಚಿತ ನಿಜವನು ನುಡಿಯೆ ನಿನಗವು
ರುಚಿಸವೇ ಮಾಣಲಿಯದಂತಿರಲೀ ಕುಮಂತ್ರಿಗಳ
ವಚನವತಿಗಾಢದಲಿ ನಟ್ಟುದು
ಸಚಿವ ನಯವಿನ್ನೇಕೆ ಸೇನಾ
ನಿಚಯಕೆಮ್ಮನು ಮೊದಲಿಗನ ಮಾಡರಸ ಹೋಗೆಂದ ೨೫

ಖಳನ ಕಳುಹಿದನತಿಬಳನು ತ
ನ್ನೊಳಗೆ ನೆನೆದನು ಪಾಂಡುನಂದನ
ರುಳಿವು ತನ್ನದು ಮೀರಿ ಕಾದುವಡಸುರರಿಪುವಿಹನು
ಅಳುಕಿ ಕಾದುವಡಿತ್ತ ಹಾವಿನ
ಹಳವಿಗೆಯ ಕಡಮೂರ್ಖನಿಗೆ ಬೆಂ
ಬಲವ ಕಾಣೆನು ತನಗೆ ಹದನೇನೆನುತ ಚಿಂತಿಸಿದ ೨೬

ಆದಡೇನಿದಿರಾದ ರಿಪುಬಲ
ವಾದುದನು ಸಂಹರಿಸಿ ಮಕ್ಕಳ
ಕಾದು ಬಿಸುಡುವೆನೊಡಲನಾ ಸಂಗ್ರಾಮಭೂಮಿಯಲಿ
ಆದುದಾಗಲಿ ಬಳಿಕ ಮಾಡುವ
ಭೇದ ಬೇರಿಲ್ಲೆನುತ ಹೃತ್ಸಂ
ವಾದವನು ಬೀಳ್ಕೊಟ್ಟು ಗಂಗಾಸೂನು ಪವಡಿಸಿದ ೨೭

ಮಗನೊಡನೆ ಮೂದಲಿಸಿ ಭೀಷ್ಮನು
ಹೊಗುವ ಗಡ ಪರಸೇನೆಯನು ಕಾ
ಳಗವ ನೋಡುವೆನೆಂಬವೊಲು ತಲೆದೋರಿದನು ದಿನಪ
ನಗೆಯುಡುಗಿ ನಾಚಿದವು ಕುಮುದಾ
ಳಿಗಳು ಮುಂಗಾಣಿಕೆಯ ಹರುಷದೊ
ಳಗಿದು ವಿರಹವ ಬೀಳುಕೊಟ್ಟುವು ಚಕ್ಕವಕ್ಕಿಗಳು ೨೮

ಅರಸನುಪ್ಪವಡಿಸಿದನವನೀ
ಶ್ವರವಿಹಿತಸತ್ಕರ್ಮವನು ವಿ
ಸ್ತರಿಸಿದನು ಚಾವಡಿಗೆ ಬಂದನು ಹರುಷದುಬ್ಬಿನಲಿ
ಚರರನಟ್ಟಿದನಖಿಳಧರಣೀ
ಶ್ವರ ನಿಕಾಯಕೆ ಸಕಲ ಸುಭಟರ
ಬರಿಸಿದನು ತರಿಸಿದನು ಪಟ್ಟಕೆ ಬೇಹ ವಸ್ತುಗಳ ೨೯

ಗುರುತನುಜ ರವಿಸೂನು ಮಾದ್ರೇ
ಶ್ವರ ಕೃಪದ್ರೋಣಾದಿಗಳು ಬಂ
ದರಮನೆಗೆ ಹೊಕ್ಕರು ನದೀನಂದನನ ಬಳಿವಿಡಿದು
ನೆರೆದರವನೀ ನಿರ್ಜರರು ಕೇ
ಸರಿಯ ಪೀಠವ ರಚಿಸಿ ವೈದಿಕ
ಪರಿಣತರ ಮತದಿಂದ ವಿಸ್ತರಿಸಿದರು ಮಂಗಳವ ೩೦

ಕಮಲಜನ ಹೋಲುವೆಯ ಧಾರುಣಿ
ಯಮರಕರದಲಿ ನಿಗಮ ಪೂತೋ
ತ್ತಮ ಸುವಾರಿಗಳಿಳಿದವಜಸನ್ನಿಭನ ಮಸ್ತಕಕೆ
ಕಮಲಜನ ಕರದಿಂದ ಗಂಗಾ
ವಿಮಲನದಿಯಿಳಿತಂದು ಸಾರ್ದುದೊ
ಹಿಮಗಿರಿಯನೆಂಬಂತಿರಿಳಿದುದು ಪಟ್ಟದಭಿಷೇಕ ೩೧

ಆರತಿಯನೆತ್ತಿದರು ತಂದು
ಪ್ಪಾರತಿಯ ಸೂಸಿದರು ನೃಪಪರಿ
ವಾರವೆಲ್ಲವು ಬಂದು ಕಂಡುದು ಕಾಣಿಕೆಯ ನೀಡಿ
ಕೌರವೇಂದ್ರನ ಮೋಹರದ ಗುರು
ಭಾರ ಭೀಷ್ಮಂಗಾಯ್ತು ಸಮರದ
ವೀರಪಟ್ಟವನಾಂತನಾಚಾರ್ಯಾದಿಗಳು ನಲಿಯೆ ೩೨

ಈ ನದೀನಂದನನ ಬಲದಲಿ
ಸೇನೆ ಶಿವಗಂಜುವುದೆ ಕುಂತೀ
ಸೂನುಗಳಿಗಾರಣ್ಯಜಪವಿನ್ನವರಿಗಿಳೆಯೇಕೆ
ಮಾನನಿಧಿ ಭೀಷ್ಮಂಗೆ ಸಮರ ಸ
ಮಾನಭಟನಿನ್ನಾವನೆಂದು ಮ
ನೋನುರಾಗದ ಮೇಲೆ ಕೌರವರಾಯ ಬಣ್ಣಿಸಿದ ೩೩

ಎಲೆ ಮರುಳೆ ಭೂಪಾಲ ಕೌರವ
ಕುಲಪಿತಾಮಹನಹನು ಧರ್ಮಂ
ಗಳಲಿ ಪರಿಣತನಹನು ಕಾಳೆಗವೆತ್ತಲಿವರೆತ್ತ
ಗಳದ ಗರಳನ ದೊರೆಯ ಭಟಮಂ
ಡಲಿಯೊಳಗೆ ಮನ್ನಣೆಯ ಹೇಳೈ
ಕಳಿದ ಹರೆಯಂಗೆಂದು ಗಹಗಹಿಸಿದನು ಕಲಿಕರ್ಣ ೩೪

ತೊಗಲು ಸಡಿಲಿದ ಗಲ್ಲ ಬತ್ತಿದ
ಹೆಗಲು ನರುಕಿದ ನರೆತ ಮೀಸೆಯ
ಜಗುಳ್ದ ಹಲುಗಳ ಹಾಯಿದೆಲುಗಳ ನೆಗ್ಗಿದವಯವದ
ಅಗಿಯಲಲುಗುವ ತಲೆಯ ಮುಪ್ಪಿನ
ಮುಗುದನೀತನ ಕಾದಹೇಳಿದು
ನಗೆಯ ಸುರಿದೈ ರಾಯ ಕಟಕದೊಳೆಂದನಾ ಕರ್ಣ ೩೫

ಇಲ್ಲಿ ಭೀಷ್ಮನು ರಾಘವನ ಬಲ
ದಲ್ಲಿ ಜಾಂಬವನುಭಯವೀರರು
ಬಲ್ಲಿದರು ಬಳಿಕುಳಿದ ಸುಭಟರ ಶೌರ್ಯವೊಪ್ಪುವುದೆ
ನಿಲ್ಲು ನೀ ಕೊಲಲೆಳಸುವರೆ ಹಗೆ
ಯಲ್ಲಿಗೊಪ್ಪಿಸಿ ಕೊಲಿಸಲೇತಕೆ
ಬಿಲ್ಲಿನಲಿ ಬಡಿದಡ್ಡಗೆಡಹುವೆನೆಂದನಾ ಕರ್ಣ ೩೬

ಹಾ ನುಡಿಯದಿರು ನಿನ್ನ ಹವಣಿನ
ಮಾನಿಸನೆ ಸುರಸಿಂಧುಜನು ತಾ
ನೀನು ಮಿಗೆ ಮೇಲರಿಯೆ ಜವ್ವನದುಬ್ಬುಗೊಬ್ಬಿನಲಿ
ನೀನು ಸರಿಯೇ ರಾಮಕಟಕದ
ಹಾನಿಯನು ತಲೆಗಾಯ್ದ ಜಾಂಬವ
ಗೇನು ಕೊರತೆಯೆನುತ್ತ ಜರೆದನು ಗರುಡಿಯಾಚಾರ್ಯ ೩೭

ರಣದೊಳೊಡ್ಡಿದರಾತಿಗಳನೀ
ಹಣೆಯ ಪಟ್ಟದ ವೀರ ಜಯಿಸಲು
ಹಣವಿಗಾನೋಲೈಸೆ ಮಾಡುವೆನಡವಿಯಲಿ ತಪವ
ರಣದೊಳಿವನಡಗೆಡೆದನಾದರೆ
ಮಣಿಯದಿರಿದಪೆನನ್ನೆಬರ ಮಾ
ರ್ಗಣೆಯನಾಹವದೊಳಗೆ ಸಂಧಿಸೆನೆಂದನಾ ಕರ್ಣ ೩೮

ಗಳಹದಿರು ರಾಧೇಯ ನಿನ್ನಯ
ಕುಲವ ನೋಡದೆ ಮೇರೆದಪ್ಪುವ
ಸಲುಗೆಯಿದಲೇ ಸ್ವಾಮಿಸಂಪತ್ತಿನ ಸಗಾಢತನ
ಕಲಿಗಳುಳಿದಂತೆನ್ನ ಸರಿಸಕೆ
ನಿಲುವನಾವನು ದೇವದಾನವ
ರೊಳಗೆ ನಿನ್ನೊಡನೊರಲಿ ಫಲವೇನೆಂದನಾ ಭೀಷ್ಮ ೩೯

ಕೇಳು ನೃಪ ಕೇಳೈ ಜಯದ್ರಥ
ಕೇಳು ಗುರುಸುತ ಶಲ್ಯ ಕುಂಭಜ
ಕೇಳು ದುಶ್ಶಾಸನ ವಿಕರ್ಣ ಸುಲೋಚನಾದಿಗಳು
ಕಾಳೆಗದೊಳರಿ ದಶಸಹಸ್ರ ನೃ
ಪಾಲಕರ ಮಣಿಖಚಿತನಿರ್ಮಲ
ಮೌಳಿಗಳ ದಿಗುಬಲಿಯ ಕೊಡುವೆನು ದಿವಸ ದಿವಸದಲಿ ೪೦

ಹರಿಯ ಚಕ್ರವ ತುಡುಕಿಸುವೆ ವಾ
ನರಪತಾಕನ ರಥವ ಹಿಂದಕೆ
ಮುರಿಯಲಿಸುವೆನು ಮಹಿಮರಿಬ್ಬರ ನಡೆವಳಿಯ ಕೆಡಿಸಿ
ಸುರನರೋರಗರೊಳಗೆ ಮಿಗಾ
ದರಿಗೆ ಕಟ್ಟಿದ ತೊಡರು ಇವನು
ಬ್ಬರಿಸಿ ನುಡಿದರೆ ನೊರಜ ಕೊಲುವರೆ ಕೈದುವೇಕೆಂದ ೪೧

ಜಲಧಿಯುಬ್ಬಿದವೊಲು ಸಭಾಮಂ
ಡಲಿಯ ಸೌಹೃದವಾಗ್ವಿವಾದದ
ಕಳಕಳಿಕೆ ದಿಗುತಟವ ಗಬ್ಬರಿಸಿದುದು ಗಾಢದಲಿ
ಕೆಲರು ಭೀಷ್ಮನನಿನತನೂಜನ
ಕೆಲರು ಕೊಂಡಾಡಿದರು ಕೌರವ
ನಳುಕಿ ಭೀಷ್ಮನ ಬೇಡಿಕೊಂಡನು ವಿನಯಪರನಾಗಿ ೪೨

ಬೀಳುಕೊಂಡುದು ರಜನಿ ಮರುದಿನ
ವಾಳು ಕುದುರೆಯ ನೆರಹಿ ಧರಣೀ
ಪಾಲ ಸುಮುಹೂರ್ತದಲಿ ಹೊಯ್ಸಿದನಂದು ಹೊರಗುಡಿಯ
ಸೂಳವಿಸಿದವು ಲಗ್ಗೆಯಲಿ ನಿ
ಸ್ಸಾಳಕೋಟಿಗಳುರುಚತುರ್ಬಲ
ಮೇಳವಿಸಿ ನಡೆದುದು ಸಮಸ್ತ ಮಹಾಮಹೀಶ್ವರರು ೪೩

ವೀರ ಧೃತರಾಷ್ಟ್ರಂಗೆ ವರ ಗಾಂ
ಧಾರಿಗೆರಗಿದನವರ ಹರಕೆಯ
ಭೂರಿಗಳ ಕೈಕೊಂಡನವನೀಸುರರಿಗಭಿನಮಿಸಿ
ಚಾರುಚಮರದ ನಿಕರದವರೊ
ಯ್ಯಾರಿಸಲು ಜಯರವದ ರಭಸದು
ದಾರ ಮೆರೆಯಲು ಬೀಳುಕೊಂಡನು ರಾಜಮಂದಿರವ ೪೪

ಒಡನೊಡನೆ ಕರಿತುರಗವೇರಿದ
ರೊಡನೆ ಹುಟ್ಟಿದ ಶತಕುಮಾರರು
ಗಡಣದಾಪ್ತರು ಕರ್ಣ ಶಕುನಿ ಜಯದ್ರಥಾದಿಗಳು
ಅಡಸಿದವು ಸೀಗುರಿಗಳಭ್ರವ
ತುಡುಕಿದವು ಝಲ್ಲರಿಗಳಂತ್ಯದ
ಕಡಲವೊಲು ಪಡೆ ನಡೆಪಿ ಹಸ್ತಿನಪುರವ ಹೊರವಂಟ ೪೫

ಭುಗುಗುಗಿಪ ಚಂಬಕನ ಗಜ ಕೋ
ಟಿಗಳ ಮುಂದಣ ಡೌಡೆಗಳ ಭೂ
ಗಗನವೊಡನೊಡನೊದರೆ ಮೊರೆವ ಗಭೀರಭೇರಿಗಳ
ಅಗಿವ ಪಟಹ ಮೃದಂಗ ಕಹಳಾ
ದಿಗಳ ಕಳಕಳ ರಭಸ ದಶದಿ
ಕ್ಕುಗಳ ಮಾತಾಡಿಸೆ ಮಹಾಬಲ ತೆರಳಿತಿಭಪುರಿಯ ೪೬

ಅಗಿವ ವಜ್ರದ ಹೊಳೆಕೆಗಳೊ ದಿಟ
ಹಗಲ ತಗಡೋ ಮೇಣು ಮಿಂಚಿನ
ಬಗೆಯ ಸೆಕ್ಕೆಯೊ ಸೂರ್ಯಕಾಂತಚ್ಛವಿಯ ತೆಕ್ಕೆಗಳೊ
ಜಗುಳಿದೊರೆಗಳ ಜಾಳಿಗೆಯ ಹೊಗ
ರೊಗಲು ಝಳಪಿಸೆ ಹೊಳೆಹೊಳೆವ ಕೈ
ದುಗಳ ಹಬ್ಬುಗೆವೆಳಗು ಗಬ್ಬರಿಸಿದುದು ದಿಗುತಟವ ೪೭

ಜಲಧಿಗಳ ಕುಡಿದುದು ನಭೋಮಂ
ಡಲವ ಸೆಳೆದುದು ಸುರನದಿಯ ಮು
ಕ್ಕುಳಿಸಿತಖಿಲಾದ್ರಿಗಳ ನುಂಗಿತು ದಿವವನಳುಕಿಸಿತು
ನೆಲನ ಸವೆಸಿತು ನೇಸರಿನ ಕಂ
ಗಳನು ಕದುಕಿತು ನೆನೆಯ ಬಾರದು
ನಳಿನಭವ ಹರನಾದನೆನಲುಚ್ಚಳಿಸೆ ಪದಧೂಳಿ ೪೮

ಸುರಿವ ಗಜಮದಧಾರೆಯಲಿ ಹೊಸ
ಶರಧಿಗಳು ಸಂಭವಿಸಿದವು ನೃಪ
ವರರ ಮಕುಟದ ಮಣಿಯೊಳಾದರು ಚಂದ್ರಸೂರಿಯರು
ಗಿರಿಗಳಾದುವು ದಂತಿಯಲಿ ಪಡಿ
ಧರಣಿಯಾದವು ಛತ್ರ ಚಮರದ
ಲರರೆ ನೂತನ ಸೃಷ್ಟಿಯಾಯ್ತು ವಿರಿಂಚಸೃಷ್ಟಿಯಲಿ ೪೯

ಅರರೆ ನಡೆದುದು ಸೇನೆ ಕುಲಗಿರಿ
ಯೆರಡು ಕೂರುಮ ಫಣಿಪರಿಬ್ಬ
ರ್ಬರ ದಿಶಾಮಾತಂಗಗಳ ಹದಿನಾರನಳವಡಿಸಿ
ಸರಸಿಜೋದ್ಭವ ಸೃಜಿಸದಿರ್ದಾರೆ
ಧರಿಸಲಾಪುದೆ ಧರಣಿಯೆನೆ ಕುರು
ಧರೆಗೆ ಬಂದುದು ಸೇನೆ ಪಯಣದ ಮೇಲೆ ಪಯಣದಲಿ ೫೦

ನಡೆದು ಬಂದುದು ಕೌರವೇಂದ್ರನ
ಪಡೆ ಕುರುಕ್ಷೇತ್ರಕ್ಕೆ ಮೂಡಣ
ಕಡೆಯಲಳವಡಿಸಿದರು ಬೀಡಾಯಿತ್ತು ವಹಿಲದಲಿ
ಗುಡಿಗಳನು ಬಿಡಿಸಿದರು ಲೋಹದ
ತಡಿಕೆಗಳನಳವಡಿಸಿ ಬೀಡಿನ
ನಡುವೆ ರಚಿಸಿದರವನಿಪಾಲನ ರಾಜಮಂದಿರವ ೫೧

ಅಳವಿ ನಾಲ್ವತ್ತೆಂಟರೊಳಗಿ
ಟ್ಟಳಿಸಿ ಬಿಟ್ಟುದು ಸೇನೆ ಕೋಟಾ
ವಳಯುವಗಳಲ್ಲಲ್ಲಿ ತಳಿ ಮುಳುವೇಲಿ ಪಡಿಯಗಳು
ಕೆಲದೊಳೊಪ್ಪುವ ಭೋಗವತಿ ನಿ
ರ್ಮಲ ಗಭೀರೋದಕದ ನದಿ ಕುರು
ಬಲದ ಪಾಳಯದಂಗವಿದು ಕೇಳೈ ಮಹೀಪಾಲ ೫೨

ಪಡೆಯ ಮುಂಗುಡಿ ಭೀಷ್ಮನದು ಬಲ
ನೆಡನು ಹಿಂಗುಡಿಯಾತನದು ನೃಪ
ಗಡಣಬೀಡಿನ ಕಾಹು ಗಂಗಾಸುತನ ಗುರುಭಾರ
ನಡೆವಡಾತನ ನೇಮ ಮರಳಿದು
ಬಿಡುವಡಾತನ ಮಾತು ಕೌರವ
ಪಡೆಗೆ ಭಾರಿಯ ವಜ್ರ ಪಂಜರವಾದನಾ ಭೀಷ್ಮ ೫೩

ಕೇಳು ಜನಮೇಜಯ ಧರಿತ್ರೀ
ಪಾಲ ಧೃತರಾಷ್ಟ್ರಂಗೆ ಮಕ್ಕಳ
ಮೇಲೆ ನೆನೆಹಾಯ್ತಧಿಕಶೋಕೋದ್ರೇಕ ಪಲ್ಲವಿಸೆ
ಕಾಳೆಗದೊಳೇನಾದರೋ ಭೂ
ಪಾಲತಿಲಕರು ದೃಗುವಿಹೀನರ
ಬಾಳಿಕೆಯ ಸುಡಲೆನುತ ತನ್ನೊಳು ಹಿರಿದು ಚಿಂತಿಸಿದ ೫೪

ಆ ಸಮಯದಲಿ ರಾಯ ವೇದ
ವ್ಯಾಸಮುನಿ ನಡೆತಂದು ಗತಪರಿ
ತೋಷವನು ಸಂತೈಸಿ ಕರೆಸಿದನಂದು ಸಂಜಯನ
ಆ ಸಮರವೃತ್ತಾಂತ ನಿನಗೆ ಸ
ಮಾಸ ವಿಸ್ತರವಾಗಿರಲಿ ಭೂ
ಮಿಾಶತಿಲಕಂಗರುಹುವುದು ನೀನೆಂದು ನೇಮಿಸಿದ ೫೫

ಪರಮ ವೇದವ್ಯಾಸ ಮುನಿಪನ
ಕರುಣವಾಗಲು ಕಂಗಳಿಗೆ ಗೋ
ಚರಿಸಿತೀ ಭಾರತ ಮಹಾಸಂಗ್ರಾಮ ಸೌರಂಭ
ಧುರದ ವೃತ್ತಾಂತವನು ಚಿತ್ತೈ
ಸರಸ ತಿಳುಹುವೆನೆಂದು ಸಲೆ ವಿ
ಸ್ತರಿಸ ಬಗೆದನು ಸಂಜಯನು ಧೃತರಾಷ್ಟ್ರ ಭೂಪತಿಗೆ ೫೬

ಅವಧರಿಸು ಧೃತರಾಷ್ಟ್ರ ಗಂಗಾ
ಭವನ ನೇಮದಲಂದು ಮಹದಾ
ಹವಕೆ ನಡೆದುದು ಕಟಕವಲ್ಲಿಯುಲೂಕನೆಂಬುವನು
ಇವರು ಕಳುಹಿದೊಡವರು ರಿಪು ಪಾಂ
ಡವರ ಹೊರಗೈತಂದನಿನ್ನಾ
ಹವಕೆ ನಿಂದರು ಧರ್ಮಪುತ್ರ ವಿಳಂಬವೇಕೆಂದ ೫೭

ಅಗ್ಗಳೆಯನೆಮ್ಮರಸ ಸಂಪ್ರತಿ
ನೆಗ್ಗಿ ಕೆಟ್ಟರಿ ನೀವು ನಿಮಗೀ
ಹುಗ್ಗಿಗರು ಹುರಿಗೂಡಿ ಗೆಲಿದಿನ್ನಿಳೆಯ ಕೊಡಿಸುವರೆ
ಅಗ್ಗಿ ತಾ ಮಾತೇಕೆ ರಣದಲಿ
ನುಗ್ಗುನುಗ್ಗಾಗದೆ ಸಹೋದರ
ರೊಗ್ಗು ಮುರಿಯದೆ ಮಾಣದರೆಗೇಡಾಯ್ತು ನಿಮಗೆಂದ ೫೮

ಬೆಂಬಲಕೆ ತಾನೆಂದು ಬಯಲ ವಿ
ಡಂಬದಲಿ ಕಾಳೆಗವ ಮಸೆದರೆ
ನಂಬಿ ಕೆಟ್ಟರಿ ಕೃಷ್ಣನನು ನೀವೇನ ಮಾಡುವಿರಿ
ಇಂಬುಗೆಟ್ಟುದು ರೀತಿ ರಣಕೆ ತ್ರಿ
ಯಂಬಕನನಮರಾಧಿಪನ ಕೈ
ಕೊಂಬನೇ ಕೌರವನೆನಲು ಖತಿಗೊಂಡನಾ ಭೀಮ ೫೯

ಹೇಳು ಕುನ್ನಿಯ ಬಾಯನೆಲವೋ
ತೋಳ ತೀಟೆಯನವನ ನೆತ್ತಿಯ
ಮೇಲೆ ಕಳೆವೆನು ಕಲಕುವೆನು ಕೌರವ ಬಲಾಂಬುಧಿಯ
ಹೇಳು ಹೋಗೀ ನಾಯನಾಡಿಸಿ
ಕೇಳುತಿರಲೇಕಹಿತ ಕುರುಕುಲ
ಕಾಲಭೈರವನೆಂದು ನಿನ್ನೊಡೆಯಂಗೆ ಹೇಳೆಂದ ೬೦

ಮಾಡಲಿದ್ದುದು ಬಹಳ ಪೌರುಷ
ವಾಡಿ ಕೆಡಿಸಲದೇಕೆ ಕೌರವ
ರಾಡಿ ಕೆಡಿಸಲಿ ಮಾಡಿ ಕೆಡಿಸಲಿ ಚಿಂತೆ ನಮಗೇಕೆ
ಮಾಡಿದೆವು ಗುರುಭಾರವನು ಮುರ
ಗೇಡಿಯಲಿ ರಣಪಾರಪತ್ಯವ
ಮಾಡುವಾತನು ಕೃಷ್ಣನೆಂದನು ಧರ್ಮಸುತ ನಗುತ ೬೧

ವೈರಿದೂತನ ಕಳುಹಿದನು ಕೈ
ವಾರಿಗಳು ಜಯಜಯಯೆನಲು ಹೊಂ
ದೇರ ತರಸಿದನಬುಜನಾಭನ ಪದಯುಗಕೆ ನಮಿಸಿ
ವಾರುವದ ಖುರನಾಲ್ಕರಲಿ ಮಣಿ
ಚಾರು ಕನಕವ ಸುರಿದು ಧರ್ಮಜ
ತೇರನೇರಿದನೊದರಿದವು ನಿಸ್ಸಾಳ ಕೋಟಿಗಳು ೬೨

ಹರಿಯ ಬಲವಂದಣ್ಣನಂಘ್ರಿಗೆ
ಶಿರವ ಚಾಚಿ ನಿಜಾಯುಧವ ವಿ
ಸ್ತರಿಸಿ ಪವನಜ ಪಾರ್ಥಮಾದ್ರೀಸುತರು ರಥವೇರಿ
ಧುರಕೆ ನಡೆದರು ದ್ರುಪದ ಸಾತ್ಯಕಿ
ವರ ವಿರಾಟಾದಿಗಳು ಚೂಣಿಯೊ
ಳುರವಣಿಸಿದರು ಸೇನೆ ನಡೆದುದು ಮುಂದೆ ಸಂದಣಿಸಿ ೬೩

ಬಳಿಕ ಧೃಷ್ಟದ್ಯುಮ್ನನಾಜ್ಞೆಯೊ
ಳಳವಿಗೊಟ್ಟುದು ಸೇನೆ ಮೂಡಣ
ಜಲಧಿಗಾಂತುದು ಪಶ್ಚಿಮೋದಧಿಯೆಂಬ ರಭಸದಲಿ
ಪಳಹರದ ತೋಮರದ ಕಂಂತಾ
ವಳಿಯ ಚಮರಚ್ಛತ್ರಮಯ ಸಂ
ಕುಳದಿನಾದುದು ಭೂತ ನಾಲ್ಕಾಕಾಶಗತವಾಗಿ ೬೪

ಎರಡನೆಯ ಸಂಧಿ

ಸೂ. ಸಾಮದಲಿ ಪರಬಲದ ಸುಭಟ
ಸ್ತೋಮವನು ತನ್ನೊಳಗು ಮಾಡಿಯೆ
ಭೂಮಿಪತಿ ಯಮನಂದನನು ಸಂಗ್ರಾಮಕನುವಾದ

ಕೇಳು ಜನಮೇಜಯ ಧರಿತ್ರೀ
ಪಾಲ ಧೃಷ್ಟದ್ಯುಮ್ನ ಭೀಷ್ಮರ
ಪಾಳಯದೊಳಂದಮವು ಕೈಗೈದಿಳೆಗೆ ಹೊಸತೆನಿಸಿ
ಕಾಳೆಗಕ್ಕನುವಾಗಿ ರಥತುರ
ಗಾಳಿ ಕರಿ ಕಾಲಾಳು ದೊರೆಗಳ
ಮೇಲುಗೈಚಮರಿಗಳನೀಕ್ಷಿಸುತಿದ್ದುದುಭಯಬಲ ೧

ಮಡದ ಸೋಂಕಿಂ ಮುನ್ನ ಗಗನವ
ತುಡುಕ ಬಗೆದವು ತೇಜಿಗಳು ನಸು
ಸಡಿಲಬಿಡೆ ವಾಘೆಯಲಿ ಚಿಗಿದುವು ರಥದ ವಾಜಿಗಳು
ತುಡುಕುವಂಕುಶದಿಂದ ಮುನ್ನಿಳೆ
ಯೊಡೆಯೆ ಗಜ ಗಾಢಿಸಿದವರಸರ
ಬಿಡುಹು ತಡೆದೆಡಗಲಸಬಗೆದುವು ವಿಗಡ ಪಾಯದಳ ೨

ಗಜದ ಬಲುಗರ್ಜನೆಯ ವಾಜಿ
ವ್ರಜದ ಹೇಷಿತರವದ ತೇರಿನ
ಗಜಬಜದ ಕಾಲಾಳು ಕಡುಹಿನ ಬೊಬ್ಬೆಯಬ್ಬರದ
ಗಜರುವಗ್ಗದ ಬೊಗ್ಗುಗಳ ದಿ
ಗ್ವ್ರಜವ ನುಡಿಸುವ ರಾಯಗಿಡಿಗನ
ವಿಜಯಬಲ ತೊಡರಿಕ್ಕಿತೈ ಕಲ್ಪಾಂತ ಸಾಗರಕೆ ೩

ತಿಗಡಲೊದರುವ ಹರಿಗೆಗಳ ಗೌ
ರಗಿವ ಹೆಗ್ಗಹಳೆಗಳ ಹೊನ್ನಾ
ಯುಗದ ಖಡುಗದ ಗಜರು ಡೊಂಕಣಿಗಳ ಝಣತ್ಕೃತಿಯ
ಬಿಗಿದ ಬಿಲು ಬೊಬ್ಬೆಗಳ ಬಿರುದರ
ವಿಗಡ ಮೂದಲೆಗಳ ಮಹಾಧ್ವನಿ
ಬಿಗಿದುದೈ ತಾವರೆಯ ತನಯನ ಕರ್ಣ ಕೋಟರವ ೪

ಕುಣಿವ ಕುದುರೆಯ ಮದದ ಬಲುಭಾ
ರಣೆಯಲೊಲೆವಾನೆಗಳ ತುರಗವ
ಕೆಣಕಿ ಸರಳಿಸಿ ಹಿಡಿವ ತೇರಿನ ಸೂತರೋಜೆಗಳ
ಅಣಿವ ಹರಿಗೆಯನೊಬ್ಬನೊಬ್ಬರ
ನಣಸಿನಲಿ ತಿವಿದಗಿವ ಭಟರೊ
ಡ್ಡಣೆ ಸಘಾಡಿಸಿತೆರಡುಬಲದಲಿ ಭೂಪ ಕೇಳೆಂದ ೫

ಝಳಪದಲಿ ಬೊಬ್ಬಿಡುವಡಾಯುಧ
ಹೊಳವುಗಳ ಡೊಂಕಣಿಯ ತಳಪದ
ಬೆಳಗುಗಳ ಬಟ್ಟೇರ ಧಾರೆಯ ಬಳ್ಳಿಮಿಂಚುಗಳ
ಅಲಗಿನುಬ್ಬರಗಿಡಿಯ ಹಬ್ಬುಗೆ
ಥಳಥಳಿಸಿ ಸೈಗರೆದುದೈ ಹೆ
ಬ್ಬಲ ದಿವಾಕರಶತವನೆನೆ ಹೆಸರಿಡುವನಾರೆಂದ ೬

ಕೇಳು ಜನಮೇಜಯ ಧರಿತ್ರೀ
ಪಾಲ ಭೀಷ್ಮನ ಹೊರೆಗೆ ಕುರುಭೂ
ಪಾಲ ಬಂದನು ಬಿನ್ನವಿಸಿದನು ಮುಕುಳಕರನಾಗಿ
ಮೇಳದಲಿ ಮಂಡಳಿಸಿದರಿನೃಪ
ಜಾಲದಲಿ ಯಮಸೂನುವಾವನು
ಮೇಲೆ ಭೀಮಾರ್ಜುನರ ವಿವರಿಸಿ ತೋರಬೇಕೆಂದ ೭

ನಸುನಗೆಯ ಚೂಣಿಯಲಿ ವದನದ
ರಸುಮೆ ಝಳಪಿಸೆ ಕೌರವೇಂದ್ರಂ
ಗುಸುರಿದನು ಕಲಿಭೀಷ್ಮನವಧರಿಸೈ ಮಹೀಪತಿಯೆ
ಪಸರಿಸಿದ ಮುಗಿಲೊಡ್ಡಿನಲಿ ಮಿಂ
ಚೆಸೆವವೊಲು ಗಜದಳದ ಮಧ್ಯದೊ
ಳೆಸೆವನಾತನು ವೀರಧೃಷ್ಟದ್ಯುಮ್ನ ನೋಡೆಂದ ೮

ಇವ ಕಣಾ ಪಾಂಡವರ ಸೇನಾ
ರ್ಣವಕೆ ನಾಯಕನಿವನ ಕೆಲಬಲ
ದವರು ತೆಕ್ಕೆಯ ತೇರ ತೇಜಿಯ ಥಟ್ಟಿನುನ್ನತಿಯ
ಬವರಿಗರು ಪಾಂಚಾಲಕುಲ ಸಂ
ಭವರು ದ್ರುಪದ ಸಹೋದರರು ಮ
ತ್ತಿವರು ಸೃಂಜಯ ವರ ಯುಧಾಮನ್ಯೂತ್ತಮೌಂಜಸರು ೯

ಡೊಂಕಣಿಯ ಹೊದರುಗಳಲೆಡಬಲ
ವಂಕದಾನೆಯ ಥಟ್ಟುಗಳ ನಿ
ಶ್ಶಂಕಮಲ್ಲನು ದ್ರುಪದನೀತ ವಿರಾಟನೃಪನೀತ
ಮುಂಕುಡಿಯ ನಾಯಕರಿವರು ಪತಿ
ಯಂಕಕಾರರು ಇವರ ಬಳಿಯಲಿ
ಬಿಂಕದೆರಡಕ್ಷೋಣಿ ಬಲವದೆ ರಾಯ ನೋಡೆಂದ ೧೦

ಅವರ ಮೋಹರದಾಚೆಯಲಿ ನಿಂ
ತವರು ಕೊಂತೀಭೋಜ ಕೇಕಯ
ರವರ ಬಳಿಯಲಿ ತಳಿತುದೆರಡಕ್ಷೋಹಿಣೀ ಸೇನೆ
ಅವರ ಹತ್ತಿರೆ ಮೋಹರಿಸಿ ನಿಂ
ದವರು ಪಾಂಡ್ಯ ಶಿಖಂಡಿ ಸೋಮಕ
ರವರ ಮೋಹರದೊಳಗೆ ನೋಡಕ್ಷೋಹಿಣೀ ಸೇನೆ ೧೧

ಅರೆನೆಲೆಯ ದಳದತ್ತ ದೃಷ್ಟಿಯ
ಹರಿಯಬಿಡು ನೋಡಲ್ಲಿ ಕೌಂತೇ
ಯರ ಕುಮಾರರನಮಲ ಪಂಚ ದ್ರೌಪದೀಸುತರ
ಉರಿಯ ಕರುವಿಟ್ಟಂತೆ ವಿಲಯದ
ಹರನ ಖತಿ ಹೊಗೆವಂತೆ ಸಿಡಿಲಿನ
ಹೊರಳಿ ಹೊದರೆದ್ದಂತೆ ನಿಂದವನವ ಘಟೋತ್ಕಚನು ೧೨

ಭೀಮಸೇನನ ಮಗನವನು ಸಂ
ಗ್ರಾಮು ಚಾಪಟನವನ ಬಳಿಯಲಿ
ತಾಮಸದ ಬಲುಮೊಗದ ಹೊಗರಿನ ಹೊಳೆವ ದಾಡೆಗಳ
ಕಾಮರೂಪಿಗಳೊಂದು ಕೋಟಿ ಸ
ನಾಮದೈತ್ಯರು ಕುಂಭಕರ್ಣ
ಸ್ತೋಮವೆನಲದೆ ಲಯಕೃತಾಂತನ ಕ್ರೂರ ಪರಿವಾರ ೧೩

ಅವರ ಹೊರೆಯಲಿ ಫಲುಗುಣಗೆ ಮಲೆ
ವವರ ಗಂಡನು ರಿಪುಕುಮಾರಕ
ನಿವಹ ಕಾಳಾನಳನು ನೋಡಭಿಮನ್ಯುವರ್ಜುನನ
ಕುವರನಿವ ಮಗುವಲ್ಲ ಬಲುಗೆ
ಯ್ಯವನ ಮೋಹರದೊತ್ತಿನಲಿ ನಿಂ
ದವರು ಸಾತ್ಯಕಿ ಚೇಕಿತಾನ ಪ್ರಮುಖ ನಾಯಕರು ೧೪

ಅವರೊಳೊಂದಕ್ಷೋಹಿಣಿಯದು ಮಾ
ಧವನ ಮನೆಯದು ಧೃಷ್ಟಕೇತು
ಪ್ರವರನಾತನು ಚೈದ್ಯನಂದನನವರ ಕಂಡಿಹನು
ಅವರ ಹೊರೆಯಲಿ ವೀರ ಸೇನಾ
ನಿವಹದೊಳು ಸಹದೇವನಾತನ
ಸವಹರೆಯ ನಕುಲಾಂಕನಿವರಾಹವ ಧುರಂಧರರು ೧೫

ಇತ್ತಲಿದು ಕಲ್ಪಾಂತರುದ್ರನ
ಮೊತ್ತ ಕಾಳೋರಗನ ಜಂಗುಳಿ
ಮತ್ಯುವಿನ ಮೋಹರ ಕೃತಾಂತನ ಥಟ್ಟು ಭೈರವನ
ತೆತ್ತಿಗರ ದಾವಣಿಯೊಳಣ್ಣನ
ಮತ್ತವಾರಣ ಭೀಮಸೇನನ
ನಿತ್ತ ನೋಡೈ ಮಗನೆ ಕುರುಕುಲ ಕೇಣಿಕಾರನನು ೧೬

ಕೆಲದಲಾ ತರುವಾಯಲಾಹವ
ದಳಲಿಗರ ಮೇಳದಲಿ ಮಕುಟದ
ಲಲಿತರತ್ನಪ್ರಭೆಯ ಲಹರಿಯ ಲಾವಣಿಗೆ ಮಿಂಗಲು
ಚಲತುರಂಗದ ಭಾರಿಯಾನೆಯ
ದಳದ ರಥದ ಪದಾತಿಮಧ್ಯದ
ಹೊಳಹಿನಲಿ ನಿಂದಾತನಾತ ಮಹೀಶ ಧರ್ಮಜನು ೧೭

ಆತನೆಡವಂಕದಲಿ ಹನುಮನ
ಕೇತನದ ಗರುವಾಯಿಯಲಿ ನವ
ಶಾತಕುಂಭವರೂಥದಲಿ ನೆರೆ ತೀವಿದಸ್ತ್ರದಲಿ
ನೂತನಾಶ್ವ ನಿಕಾಯ ಖುರಪುಟ
ಧೂತಧೂಳೀಪಟಲವಿಹಿತ ನಿ
ಶಾತಘನ ಜಯಯುವತಿವಿಟನರ್ಜುನನ ನೋಡೆಂದ ೧೮

ತಿಳಿಯಲೊಬ್ಬನ ರೋಮರೋಮದ
ಕುಳಿಯೊಳಗೆ ಬ್ರಹ್ಮಾಂಡಕೋಟಿಯ
ಸುಳಿವು ಗಡ ಶ್ರುತಿನಿಕರವೊರಲಿದರೊಳಗುದೋರ ಗಡ
ಹಲವು ಮಾತೇನಾತನೀತನ
ಬಳಿಯ ಬಂಡಿಯ ಬೋವನಾಗಿಯೆ
ಸುಳಿವನಾತನ ನೋಡು ಮಗನೇ ವೀರನರಯಣನ ೧೯

ಅದೆ ದುರಂತದ ದುರುಳ ದೊದ್ದೆಯ
ಹದನ ಬಣ್ಣಿಸಲೆನಗೆ ನೂಕದು
ತುದಿಯಲರಿವೆನು ದಳದ ಮನ್ನೆಯ ಮಂಡಲೀಕರಲಿ
ಕದನವಿದು ಭಾರಂಕವಾರ
ಭ್ಯುದಯ ತಲೆದೋರುವುದೊ ನಮಗೇ
ಕಿದರ ಚಿಂತೆ ಮುರಾರಿ ಬಲ್ಲನು ಕಂದ ಕೇಳೆಂದ ೨೦

ಅವರೊಳೇಳಕ್ಷೋಣಿಬಲ ನ
ಮ್ಮವರೊಳಗೆ ಹನ್ನೊಂದು ಮತ್ತವ
ರಿವರ ಸಖ್ಯಕೆ ನೆರೆದುದೇಕಾದಶಶತಕ್ಷೋಣಿ
ತವಿಸುವರೆ ನನಗೊಂದು ದಿನ ಮೂ
ದಿವಸದಲಿ ಗುರುವೈದು ದಿವಸಕೆ
ರವಿಜ ನಿಮಿಷಕೆ ದ್ರೌಣಿ ನಿಮಿಷಾರ್ಧಕೆ ಧನಂಜಯನು ೨೧

ಎನಲು ಗುರುತನಯನ ಸಘಾಟಕೆ
ಕೊನರಿತಾತನ ಮನವಜಾಂಡಕೆ
ತನುಪುಲಕದುಬ್ಬಿನಲಿ ಪಾರ್ಥನ ಪಟುಪರಾಕ್ರಮಕೆ
ಮೊನೆಗಣೆಯ ನುಡಿ ಸೋಂಕೆ ಕರ್ಣವ
ನಿನಿತು ಕುಸಿದ ರಸಾತಳಕೆ ಕುರು
ಜನಪನ ನಿಬದ್ಧಪ್ರಲಾಪವ ಬಿಡಿಸಿದನು ಭೀಷ್ಮ ೨೨

ತಾಗಲನುಗೈದುಭಯಬಲ ಕೈ
ಲಾಗನೀಕ್ಷಿಸುತಿರಲು ರಿಪುಬಲ
ಸಾಗರದ ಸೌರಂಭವನು ಮಿಗೆ ನೋಡಿ ಧರ್ಮಜನು
ತೂಗಿದನು ಶಿರವನು ಮಹಾಹವ
ವೀಗಲಾಗದ ಮುನ್ನ ಭೇದದ
ಲಾಗಿನಲಿ ಭೀಷ್ಮಾದಿಗಳ ಮನವೊಲಿಸಬೇಕೆಂದ ೨೩

ಬಂದು ಭೀಷ್ಮನ ಚರಣ ಕಮಲ
ದ್ವಂದ್ವದಲಿ ಚಾಚಿದನು ಮಕುಟವ
ನಿಂದಿನಾಹವದೊಳಗೆ ನಮಗಿನ್ನೇನು ನಿರ್ವಾಹ
ನಿಂದು ನೀವ್ ಕಾದುವರೆ ನಮಗಿ
ನ್ನೆಂದು ಹರಿವುದು ಬವರವೆಮಗೇ
ನೆಂದು ಬೆಸಸಿದಿರೆನುತ ಕರುಣವ ತೋರಿದನು ಭೂಪ ೨೪

ನೀವರಿಯಲಾವುತ್ತರಾಯಿಗ
ಳಾವ ಪರಿಯಲು ಕೌರವರು ಬಹ
ಳಾವಮಾನವನೆಮಗೆ ನೆಗಳಿದರೆಮ್ಮ ಸತ್ಯವನು
ನೀವು ಮೆಚ್ಚಲು ನಡಸಿದೆವು ತಲೆ
ಗಾವುದುಂಟೇ ಕರುಣಿಸಲ್ಲದ
ಡಾವ ಹದನೆಂದೆವಗೆ ನೇಮವ ಕೊಟ್ಟು ಕಳುಹೆಂದ ೨೫

ಏಳು ಮಗನೇ ನಮ್ಮ ಮತಿಯನು
ಕೇಳೆನುತ ಭೂಪಾಲ ತಿಲಕನ
ಮೌಳಿಯನು ನೆಗಹಿದನು ಗಂಗಾಸೂನು ನಸುನಗುತ
ಆಳುಗೊಂಡನು ಕೌರವನು ಪರ
ರಾಳುತನವೆಮಗಾಯ್ತು ಪರಸೇ
ವಾ ಲಘುಸ್ಥಿತರೆಮ್ಮನೇತಕೆ ನುಡಿಸಿದಪೆಯೆಂದ ೨೬

ಹಿರಿಯನಾಗಲಿ ಸುಜನನಾಗಲಿ
ಗರುವನಾಗಲಿ ಅರ್ಥವುಳ್ಳನ
ಚರಣಸೇವಾಪರರು ಜಗದಲಿ ವರ್ತಮಾನವಿದು
ಪರರ ಭಜಕರೊಳಾವಗುಣವಾ
ವಿರವದಾವಗ್ಗಳಿಕೆ ಯಾವುದು
ಗರುವತನವೈ ತಂದೆ ಪುರುಷಾಧಮನು ತಾನೆಂದ ೨೭

ಕೌರವನ ಧನವೆಂಬ ಘನಸಂ
ಸಾರಗುಣದೊಳು ಬದ್ಧನಾದೆನು
ಧೀರ ನಾನೇಗೈವೆನೆನೆ ಯಮಸೂನು ಕೈಮುಗಿದು
ವೈರವೃತ್ತಿಯ ರಣದೊಳಿಮಗಿ
ನ್ನಾರು ಗತಿ ನೀನುಭಯನೃಪರಿಗೆ
ಕಾರಣಿಕ ನೀ ಮುನಿದಡೆಮಗಿನ್ನಾಸೆಯಿಲ್ಲೆಂದ ೨೮

ಮಾನನಿಧಿ ಕೇಳ್ ಕೌರವಂಗಾ
ಧೀನವೆನ್ನಯ ತನು ವಿಧಾತ್ರಾ
ಧೀನವೆನ್ನಯ ಜೀವವದು ಕಾರಣದಿನಾವಹಕೆ
ನೀನು ಚಿಂತಿಸಬೇಡ ನನ್ನವ
ಸಾನಕಾಲಕೆ ಮತ್ತೆ ಬರಲು ನಿ
ದಾನವನು ನೆರೆ ಬುದ್ಧಿಗಲಿಸುವೆನೀಗ ಮರಳೆಂದ ೨೯

ಎನೆ ಹಸಾದವೆನುತ್ತ ಯಮನಂ
ದನನು ಕಳುಹಿಕೊಂಡು ಗಂಗಾ
ತನುಜಚಿತೋಕ್ತಿಗಳ ನೆನೆದಡಿಗಡಿಗೆ ಪುಳಕಿಸುತ
ವಿನುತಮತಿ ನಡೆತರಲು ಸುಭಟರು
ತನತನಗೆ ತೊಲಗಿದರು ಪಾಂಡವ
ಜನಪ ಮೈಯಿಕ್ಕಿದನು ದ್ರೋಣನ ಚರಣ ಕಮಲದಲಿ ೩೦

ಅರಸ ಬಂದನಪೂರ್ವವಾಯಿತುಂ
ದರುಶನವು ತನಗೆನುತ ಗರುಡಿಯ
ಗುರು ಮಹೀಪಾಲಕನ ಮಕುಟವನೆತ್ತಿದನು ಬಳಿಕ
ಬರಸೆಳೆದು ಬಿಗಿಯಪ್ಪಿದನು ಸಂ
ಗರದ ಸಮಯದಲೇಕೆ ಬಂದಿರಿ
ಭರವಸದ ಬಗೆಯೇನು ಬಿನ್ನಹ ಮಾಡು ಸಾಕೆಂದ ೩೧

ಎಮಗೆ ದೈವವು ನೀನು ಗುರು ನೀ
ನೆಮಗೆ ತಾತನು ನೀನು ಮಹದಾ
ಹವದೊಳಗೆ ಪತಿಕರಿಸಿ ರಕ್ಷಿಸಲೊಡೆಯ ನೀನೆಮಗೆ
ಅವನಿಯಭಿಲಾಷೆಯಲಿ ತೆತ್ತುದು
ಬವರವೆಮಗಿನ್ನೇನು ಗತಿ ಕೌ
ರವ ಜಯೋಪಾಯಕ್ಕೆ ಹದನೇನೆಂದು ನೃಪ ನುಡಿದ ೩೨

ಅರಸ ಕೇಳರ್ಥಕ್ಕೆ ಧರಣೀ
ಶ್ವರರ ಕಿಂಕರರರ್ಥ ತಾ ಕಿಂ
ಕರತೆಯನು ಮಾಡುವುದು ಜಗದಲಿ ವರ್ತಮಾನವಿದು
ನಿರುತ ಕೌರವನರ್ಥದಲಿ ಕಿಂ
ಕರತೆಮಗಾಯಿತ್ತು ರಾಜ್ಯೈ
ಶ್ವರಿಯ ಸೇವಾಪರರಿಗೀ ಸ್ವಾತಂತ್ರ್ಯವಿಲ್ಲೆಂದ ೩೩

ಆದರೆಮಗಿನ್ನೇನು ಗತಿ ರಣ
ವಾದಸಿದ್ಧಿಯದೆಂತು ಜಯಸಂ
ಪಾದಕರು ನಮಗಾರೆನಲು ಗುರು ಕೇಳಿ ನಸುನಗುತ
ಕಾದುವಾ ಸುಮಯದೊಳಗಪ್ರಿಯ
ವಾದ ನುಡಿಗಳ ಕೇಳಿದಾಕ್ಷಣ
ಮೇದಿನಿಯೊಳಾವಿರೆವು ಚಿಂತಿಸಬೇಡ ಹೋಗೆಂದ ೩೪

ಎನಲು ಪರಿತೋಷದಲಿ ಯಮನಂದ
ನನು ಕಳುಹಿಸಿಕೊಂಡು ನಡೆತಂ
ದನು ಮಹಾಹವರಂಗಮಧ್ಯದ ಕೃಪನ ಹೊರೆಗಾಗಿ
ವಿನಯದಲಿ ಬಿನ್ನಯಿಸೆ ಕೃಪನೆಂ
ದನು ನಿಧಾನಿಸಲಾವವಧ್ಯರು
ಜನಪ ನಿನ್ನನು ನಾವು ಕೊಲ್ಲೆವು ಮರಳು ನೀನೆಂದ ೩೫

ಕೃಪನ ಬೀಳ್ಕೊಂಡತುಳಜಯಲೋ
ಲುಪನು ಶಲ್ಯನ ಬಂದು ಕಂಡನು
ವಿಪುಳಮತಿ ಮಾತಾಡಿದನು ನಿಜರಾಜಕಾರಿಯವ
ಕೃಪೆಯ ಮಾಡುವುದೆಮಗೆ ರಣದಲಿ
ತಪನತನಯನ ತೇಜವನು ನಿ
ಷ್ಕೃಪೆಯೊಳವಗಡಿಸೆಂದು ಶಲ್ಯನೊಳಭಯವನು ಪಡೆದ ೩೬

ಬಲದೊಳಗೆ ಬೇಹವರ ನಾಲ್ವರ
ನೊಳಗುಮಾಡಿ ಧರಾಧಿಪನು ಮನ
ಗೆಲವಿನಲಿ ಮರಳಿದನು ಕೌರವ ಮೋಹರವನುಳಿದು
ತಿಳಿದು ತನ್ನೊಳು ಭೀಮಸೇನನ
ಬಲು ಗದಾಘಾತದಲಿ ಕುರುಕುಲ
ವಳಿವುದೆಂದು ಯುಯುತ್ಸು ರಥದಿಂದಿಳಿದು ನಡೆತಂದ ೩೭

ಎರಡು ಬಲ ಬೆರಗಾಗಿ ನೋಡು
ತ್ತಿರೆ ಯುಯುತ್ಸು ಮಹೀಶನಂಘ್ರಿಗೆ
ಕರವ ಮುಗಿದೆರಗಿದರೆ ಹಿಡಿದೆತ್ತಿದನು ಕರುಣದಲಿ
ಧರಣಿಪತಿ ನೀನಾರೆನಲು ಕೇ
ಳರಸ ಕೌರವನನುಜ ನಿಮ್ಮನು
ಶರಣುವೊಗಲೈತಂದೆಯುಭಯವನಿತ್ತು ಸಲಹೆಂದ ೩೮

ಹಿಂದೆ ರಾವಣನನುಜನಿರದೈ
ತಂದು ಶರಣಾಗತರ ರಕ್ಷಿಪ
ನೆಂದು ರಾಘವನಂಘ್ರಿ ಕಮಲವ ಕಂಡು ಬದುಕಿದನು
ಇಂದು ನಿಮ್ಮಂಘ್ರಿಗಳ ಮರೆವೊಗ
ಬಂದೆನೆನ್ನನು ಪತಿಕರಿಸಬೇ
ಕೆಂದು ಕೌರವನನುಜ ಬಿನ್ನಯಿಸಿದನು ಭೂಪತಿಗೆ ೩೯

ಎನಗೆ ಭೀಮಾರ್ಜುನರವೊಲು ನೀ
ನನುಜನಲ್ಲದೆ ಬೇರೆ ನಿನ್ನಲಿ
ಮನವಿಭೇದವ ಬಲ್ಲೆನೇ ಬಾಯೆನುತ ಕೈವಿಡಿದು
ಜನಪನಭಯವನಿತ್ತು ಕೌರವ
ನನುಜನನುಕೊಂಡೊಯ್ದು ನಾಹವ
ದನುಕರಣೆಯಲಿ ಸೇನೆ ಗಜಬಜಿಸಿತ್ತು ಬೊಬ್ಬೆಯಲಿ ೪೦

ಮೂರನೆಯ ಸಂಧಿ

ಸೂ. ರಾಯದನುಜಘರಟ್ಟ ಪಾಂಡವ
ರಾಯ ಜಂಗಮಜೀವ ನಿರ್ಜಿತ
ಮಾಯ ನಿಜವನು ತೋರಿ ಪಾರ್ಥನನೊಲಿದು ಬೋಧಿಸಿದ

ಹಳಚಲನುವಾಯ್ತುಭಯಸೇನಾ
ಜಲಧಿ ಕಳಕಳ ಮಿಗಲು ಮಾರುತಿ
ಮೊಳಗಿದನು ಪೌಂಡ್ರಕವ ಭೂಪನನಂತವಿಜಯವನು
ಇಳೆ ಒಳೆಯೆ ಮಣಿಪುಷ್ಪಕದ ನಿ
ರ್ಮಲ ಸುಘೋಷದೊಳಮಮ ಕೋಳಾ
ಹಳಿಸಿಮದು ಸಹದೇವ ನಕುಲರು ಸಮರಕನುವಾಯ್ತು ೧

ಕೇಳು ಜನಮೇಜಯ ಧರಿತ್ರೀ
ಪಾಳ ಹಿಮಕರ ಕುಲಲಲಾಮರು
ಕಾಳಿಗಕೆ ಕೈದಟ್ಟಿ ಹರಿದುದು ಕಳನ ಚೌಕದಲಿ
ಆಳು ಗಜಬಜಿಸಿತ್ತು ರಾವುತ
ರೋಳಿ ಸೇರಿತು ಸರಸದಲಿ ದೆ
ಖ್ಖಾಳಿಸಿದುದಿಭರಥನಿಕಾಯದ ಬೆರಳ ಬೊಬ್ಬೆಯಲಿ ೨

ಹಿಂಡೊಡೆದು ಮುಂಗುಡಿಯ ತಾ ಕಯಿ
ಕೊಂಡು ದೂವಾಳಿಯಲಿ ರಥವನು
ಮಂಡಳಿಸಿ ಕೆಲ್ಲಯಿಸಿ ಲುಳಿಯಲಿ ಲಲಿತಪೇರಯವ
ಚಂಡಗತಿಚಾಳನೆಯಲುಬ್ಬಟೆ
ಗೊಂಡಿಸದೆ ವೇಡೆಯುವ ಕೊಳ್ಳದೆ
ಗಾಂಡಿವಿಯ ಕೈಮನದ ಲಾಗನು ಪಡೆದನಸುರಾರಿ ೩

ಮುರವಿಜಯ ನಿಜಪಾಂಚಜನ್ಯವ
ನಿರದೆ ಫಲುಗುಣ ದೇವದತ್ತ
ಸ್ಫುರಿತರವವನು ರಚಿಸಿದನು ಮೂಲೋಕ ಮೈಮರೆಯೆ
ತುರಗವನು ಬೋಳಯಿಸಿ ವಾಘೆಯ
ತಿರುಹಿ ಚಮ್ಮಟಿಗೆಯಲಿ ತೇಜಿಯ
ಬರಿಯ ಬೆದರಿಸಿ ಕೃಷ್ಣ ಪಾರ್ಥನ ರಥವ ಲುಳಿವಡೆದ ೪

ಚಟುಳ ಹಯಖುರ ಖಂಡಿತೋರ್ವೀ
ನಿಟಿಲ ನಿರ್ಗತ ಬಹಳ ಧೂಳೀ
ಪಟಲ ಧೂಸರ ಸಕಲ ಜಗದಸುರಾರಿ ನಲವಿನಲಿ
ಪಟುಗತಿಯ ಗರುವಾಯಿಯಲಿ ಸಂ
ಘಟಿಸಿ ಹಯವವನು ಸುಳಿಸಿದನು ಚೌ
ಪಟದೊಳೊಯ್ಯಾರಿಸುತ ಬೋಳಯಿಸಿದನು ಕಂಧರವ ೫

ಗತಿಗೆ ಕುಣಿದವು ನಾಸಿಕದ ಹೂಂ
ಕೃತಿಯ ಫೇನೋನ್ನತಿಯ ಬಳಿಯವ
ಗತಿಯ ಕಬ್ಬಿಯ ಕೊಂಡಿಗಳ ಘಣಘಣಿತ ನಿಸ್ವನದ
ವಿತತ ಸೃಕ್ವದ ಲೋಳಿಗಳ ಸಂ
ಸೃತ ಜಠರಜ ಸ್ವೇದಜಲ ಲಾ
ಲಿತ ಹಯಾವಳಿ ಕಳನ ಗೆಲಿದವು ಹರಿಯ ನೇಮದಲಿ ೬

ನಿಲಿಸಿದನು ಫಲುಗುಣನ ರಥವನು
ತಳಪಟದೊಳೇನೈ ಮಹಾರಥ
ರಳವಿಗೊಡ್ಡಿದೆ ನಿನ್ನೊಳುಂಟೇ ಕೈಮನದ ಕಡುಹು
ಲುಳಿಯ ಬಿಲುವಿದ್ಯಾಚಮತ್ಕೃತಿ
ಯಳವು ಗರುಡಿಯೊಳಲ್ಲದೀ ರಿಪು
ಬಲಕೆ ತೋರಿಸಬಹುದೆ ಹೇಳೆಂದರ್ಜುನನ ಜರೆದ ೭

ಸಹಸವೇನದು ಜೀಯ ನೆರೆದಿ
ರ್ದಹಿತಬಲವೆನಗಾವ ಘನ ಬಿ
ನ್ನಹವ ಕೇಳೈ ಕೃಷ್ಣ ಕೌರವರಾಯರೊಡ್ಡಿನಲಿ
ಬಹಳ ಬಲರಿವರಾರು ಸೇನಾನಿ
ವಹದಲಿ ನಾಯಕರ ವಿವರಿಸ
ಬಹರೆ ಬೆಸಸೆನೆ ನುಡಿದನು ನಗೆಯ ಮೊಳೆ ಮಿನುಗೆ ೮

ಆದಡರ್ಜುನ ನೋಡು ಸೈನ್ಯ ಮ
ಹೋದಧಿಯ ಮಧ್ಯದಲಿ ಮೆರೆವವ
ನಾ ದುರಂತ ಪರಾಕ್ರಮನು ಗಂಗಾಕುಮಾರಕನು
ಕಾದಲರಿದಪನಖಿಲಬಲ ವಿಭು
ವಾದನಿವನತಿಬಲನು ಕಾಲನ
ಸಾಧಿಸಿದ ಛಲದಂಕಮಲ್ಲನು ಭೀಷ್ಮ ನೋಡೆಂದ ೯

ಮಿಸುಪ ತುದಿವೆರಳಂಬುಗೊಲೆಗೇ
ರಿಸಿದ ಬಿಲು ಮಣಿಮಯದ ಗದ್ದುಗೆ
ರಸುಮೆಗಳ ಜೋಡಿನಲಿ ಹೊಂದೇರಿನ ವಿಡಾಯಿಯಲಿ
ಮಸೆಗಣೆಯ ಬತ್ತಳಿಕೆ ತಿಗುರೇ
ರಿಸಿದ ಮೈ ಕತ್ತುರಿಯ ತಿಲಕದ
ನೊಸಲಿನಾತನ ನೋಡು ಗರುಡಿಯ ಜಾಣ ದ್ರೋಣನನು ೧೦

ರಾಯನಾತನ ಬಳಿಯಲಾ ಕ
ರ್ಣಾಯತಾಸ್ತ್ರರು ಕಾರ್ಮುಕದ ಸ್ವಾ
ಧ್ಯಾಯಸಿದ್ಧರು ಹತ್ತುಸಾವಿರ ಮಕುಟವರ್ಧನರು
ಸಾಯಲಂಜದ ಸಿತಗರದೆ ತ
ನ್ನಾಯತದೊಳಪ್ರತಿಮ ರೌದ್ರದ
ನಾಯಕರ ನೆರವಿಯೊಳು ಶಲ್ಯನೃಪಾಲ ನೋಡೆಂದ ೧೧

ಗಣನೆಗೈದದ ಹೆಗಲ ಹಿರಿಯು
ಬ್ಬಣದ ಕನಕದ ಝುಗೆಯ ತಲೆಗ
ಡ್ಡಣೆಯ ನೇಣಿನ ಹೊಗರ ಮೋರೆಯ ಕೆಂಪಿನಾಲಿಗಳ
ಮಣಿಮಯದ ತೇರುಗಳಲಾ ಸಂ
ದಣಿಯವರು ಮಾದ್ರೇಶನದು ಫಲು
ಗುಣ ನಿರೀಕ್ಷಿಪುದಿತ್ತಲೊಂದಕ್ಷೋಹಿಣೀ ಬಲವ ೧೨

ಕಳಶ ಸಿಂಧದ ಘಟ್ಟು ಸಮ್ಮುಖ
ದಳವಿಯುಲಿ ವಿಕ್ರಮು ದವಾಗ್ನಿಯ
ಝಳದೊಳುರೆ ಕಾಹೇರಿದಾಲಿಯ ಬಿಗಿದ ಹುಬ್ಬುಗಳ
ಹಿಳುಕನಪ್ಪಳಿದ ತುದಿವೆರಳ ನಡು
ಗಳದ ಕಪ್ಪಿನ ನೊಸಲ ನಯನದ
ಬಲುಭುಜನ ನೋಡಾತನಶ್ವತ್ಥಾಮ ನಿಸ್ಸೀಮ ೧೩

ಈತನೊಡ್ಡಿನ ಸಾರೆ ಸಂಗರ
ಕಾತು ಕೊಂಡದೆ ಕೃಪನ ದಳಸಂ
ಘಾತವೊಂದಕ್ಷೋಣಿ ಸುಭಟರ ಸಾಲ ಮಧ್ಯದಲಿ
ಆತ ಗೌತಮನವನ ಬಳಿಯುಲ
ಭೀತ ಬಾಹ್ಲಿಕ ವಿಂಧ್ಯರದೆ ವಿ
ಖ್ಯಾತರೊಂದಕ್ಷೋಣಿ ಕೌರವ ಸೈನ್ಯಶರಧಿಯಲಿ ೧೪

ಈತ ಮಾಳವನೀತ ಕೊಂಕಣ
ನೀತ ಗುಜ್ಜರನೀತ ಬರ್ಬರ
ನೀತ ಕೋಸಲನೀತ ಖೇಟಕನೀತ ಹಮ್ಮೀರ
ಈತ ಕೇರಳನೀತ ಸಿಂಹಳ
ನೀತ ಬೋಟಕನೀತ ಚೀನಕ
ನೀತ ಮಾಗಧನೀತ ದ್ರಾವಿಡನೀತ ಗೌಳನೃಪ ೧೫

ಆಳುಗೆಲಸಕೆ ಕೆಲಬರರಸನ
ಖೇಳಮೇಳಕೆ ಕೆಲರು ಕೆಲಬರು
ಬಾಲೆಯರ ಕೊಳುಕೊಡೆಯ ಬಳಗದ ಬಂಧುಕೃತ್ಯದಲಿ
ತೋಳ ಬಲುಹೊರೆಗಲಸಿ ಕೆಲಬರು
ಮೇಲೆ ನಮ್ಮಯ ಹಗೆಗೆ ಕೆಲಬರು
ಕಾಳಗದ ಕಾರ್ಮುಕ ನೃಪಾಲರ ನೆರವಿಯದೆಯೆಂದ ೧೬

ತಳಿತ ಪಲ್ಲವ ಸತ್ತಿಗೆಯ ಹೊಳ
ಹೊಳೆವ ಮೌಳಿಯ ರತುನ ಲಹರಿಯ
ಚಲಿಸಿ ಚಿಮ್ಮುವ ಚಮರಿ ಸೀಗುರಿಗಳ ವಿಡಾಯಿಯಲಿ
ಹಲಗೆಯಲಿ ತೆತ್ತಿಸಿದ ಹಾವಿನ
ಹಳವಿಗೆಯ ಹೊಂದೇರ ನೃಪಮಂ
ಡಳಿಯ ಮಧ್ಯದೊಳಾತ ದುರ್ಯೋಧನ ಮಹೀಪಾಲ ೧೭

ಅಳಲಿದುರಗನ ನೆರವಿ ಟೊಪ್ಪಿಗೆ
ಗಳೆದ ಸಾಳ್ವನ ಹಿಂಡು ಹಸಿದ
ವ್ವಳಿಪ ಸಿಂಹದ ಹಂತಿ ಕುಪಿತ ಕೃತಾಂತನೊಡ್ಡವಣೆ
ಕೊಲೆಗೆಲಸಕುಬ್ಬೆದ್ದ ರುದ್ರನ
ಬಲವಿದೆನೆ ಹರಹರ ಮಹಾರಥ
ರಳವಿಗೊಟ್ಟಿದೆ ನೋಡು ದುರ್ಯೋಧನ ಸಹೋದರರ ೧೮

ಉಳಿಯ ಮಿಂಚಿನ ಮಂದೆ ಸುಗತಿಯ
ಝಳಕದನಿಲನ ಘಟ್ಟು ಬೀದಿಯ
ಬಳಿಗೆ ಪುರುಷಾಮೃಗದ ಗಾವಳಿಯೆನೆ ವಿಲಾಸದಲಿ
ಹೊಳೆವ ಚಮರಿಯ ಸುತ್ತು ಝಲ್ಲಿಯ
ನೆಲಕುಗಿವ ಜೋಡುಗಳ ತೇಜಿಯ
ದಳವ ನೋಡೈ ಪಾರ್ಥ ಬಳಸಿದೆ ಕಲಿಜಯದ್ರಥನ ೧೯

ತೋರದಲಿ ಕುಲಗಿರಿಯ ಸತ್ವದ
ಸಾರದಲಿ ವಜ್ರವನು ದನಿಯಲಿ
ಕಾರ ಬರಸಿಡಿಲೆಂದವಿದನುಗಿದೊಂದುಮಾಡಿದನು
ವಾರಿಜೋದ್ಭವನೆನಲು ಝಾಡಿಯ
ಭಾರಿ ರೆಂಚೆಯ ಕೈಯ ಖಡ್ಗದ
ವಾರಣದ ಮಧ್ಯದಲಿಹನು ಭಗದತ್ತ ನೋಡೆಂದ ೨೦

ಹೊಗರೊಗುವ ಸೂನಿಗೆಯ ಸುಪತಾ
ಕೆಗಳ ಸಿಂಧದ ಹೊಳೆವ ಹೊಂಗಂ
ಬುಗೆಯ ಹೂಡಿದ ಹಯದ ಸೂತರ ಗಳದ ಗರ್ಜನೆಯ
ಅಗಿವ ಚೀತ್ಕಾರದ ಛಡಾಳದ
ವಿಗಡ ರಥಿಕರ ರಹಿಯ ರಥವಾ
ಜಿಗಳ ನೋಡೈ ಪಾರ್ಥ ಭೂರಿಶ್ರವನ ಸೈನ್ಯವಿದು ೨೧

ಹಲಗೆ ಕಡಿತಲೆ ಹರಿಗೆ ಖಂಡೆಯ
ಹೊಳೆವ ಮಡ್ಡು ಕಠಾರಿ ಡೊಂಕಣಿ
ಬಿಲು ಸರಳು ತೋಡಿಟ್ಟಿ ಮುದ್ಗರ ಪಿಂಡಿವಾಳ ಚಯ
ತಲೆಯ ನೇಣಿನ ಕೈಯ ಚೌರಿಯ
ಉಳಿಯ ಜೋಡಿನ ಕಟಿಯ ಗಂಟೆಯ
ದಳವನೀಕ್ಷಿಸು ಪಾರ್ಥ ದುಶ್ಶಾಸನನ ಪಯದಳವ ೨೨

ವೀರನಭಿಮನ್ಯುವಿನವೊಲು ರಣ
ಧೀರನಾತನ ನೋಡು ಕರ್ಣ ಕು
ಮಾರಕರು ವೃಷಸೇನನಗ್ಗದ ಚಿತ್ರಸೇನಕರು
ಚಾರುಲಕ್ಷ್ಮಣರವರು ನೂರು ಕು
ಮಾರರದೆ ದುರ್ಯೋಧನಾತ್ಮಜ
ರಾರುವನು ಕೈಕೊಳ್ಳರವದಿರು ಸುಬಲ ನಂದನರು ೨೩

ರಾಯನಣುಗರ ಗಂಡ ಕೌರವ
ರಾಯದಳ ಶೃಂಗಾರ ಮಲೆವರಿ
ರಾಯಮರ್ದನನೆಂಬ ಬಿರುದಿನಲುಲಿವ ಕಹಳೆಗಳ
ಜೀಯ ಜಯಜಯಯೆಂಬ ಪಂಡಿತ
ಗಾಯಕರ ಮಧ್ಯದಲಿ ಬೆರಳಲಿ
ಸಾಯಕವ ತಿರುಹುವನು ತಾ ಕಲಿಕರ್ಣ ನೋಡೆಂದ ೨೪

ಕರಿಘಟೆಯ ಕುರುವದಲಿ ಹಯಮೋ
ಹರದ ತೆರೆಮಾಲೆಯಲಿ ಬಲುರಥ
ಲ್ಲರಿಯ ಬುದ್ಬುದ ತತಿಯಲಸ್ತ್ರದ ಕಿಡಿಯ ವಡಬನಲಿ
ಬಿರುದರಾಯರ ರತುನರಾಜಿಯ
ಲರಿಬಲಾರ್ಣವ ಗಜರು ಮಿಗಿಲ
ಳ್ಳಿರಿಯುತದೆ ಬಹುವಿಧದ ವಾದ್ಯವಿಡಾಯ ರಭಸದಲಿ ೨೫

ಆಳ ಮಯುವಖಿಳೋರ್ವಿ ಪದಹತ
ಧೂಳಿಮಯವಾಕಾಶ ರಥತುರ
ಗಾಳಿಮಯ ದಿಗುಜಾಲವೇನೆಂಬೆನು ಮಹಾದ್ಭುತವ
ಕಾಳೆಗಕೆ ನೀನಲ್ಲದವನಿಯೊ
ಳಾಳ ಕಾಣೆನು ಪಾರ್ಥ ಸಾಕಿ
ನ್ನೇಳು ಬಾಣವ ತೂಗು ಮಾತಾಡಿಸು ಮಹಾಧನುವ ೨೬

ಎಲೆ ಧನಂಜಯ ಹಗೆಯ ಹೆಚ್ಚಿದ
ಹಳುವವಿದೆಲಾ ವಜ್ರಿಸುತ ನಿ
ನ್ನಳವಿಯಲಿ ತರುಬಿದೆ ಸುಯೋಧನ ಸೈನ್ಯ ಗಿರಿನಿಕರ
ಎಲೆ ಸಮೀರಜನನುಜ ರಿಪುಬಲ
ವಿಲಯ ಮೇಘ ನಿಕಾಯವಿದೆ ಭುಜ
ಬಲವ ತೋರೈ ತಂದೆ ನೋಡುವೆನೆಂದನಸುರಾರಿ ೨೭

ಮೆಟ್ಟಿ ನೋಡಿದನಹಿತ ರಾಯರ
ಥಟ್ಟುಗಳ ತೆರಳಿಕೆಯನುತ್ಸಹ
ಗೆಟ್ಟು ಫಲುಗುಣ ಸೆಡೆದು ಮನದಲಿ ನೊಂದು ತಲೆವಾಗಿ
ಕೆಟ್ಟು ಕಾಯದ ಸುಖಕಳುಪಿ ಒಡ
ಹುಟ್ಟಿದರ ಕೈಯಾರ ಕೊಂದರೆ
ಮುಟ್ಟದೇ ಕಡುಪಾಪ ಘನಪರಿತಾಪ ತನಗೆಂದ ೨೮

ಕೆಲರೊಡಹುಟ್ಟಿದರು ಗುರುಗಳು
ಕೆಲರು ಕೆಲಬರು ಮಾವ ಮೈದುನ
ನಳಿಯ ಮಗ ಹಿರಿಯಯ್ಯ ಮುತ್ತಯ ಮೊಮ್ಮನೆನಿಸುವರು
ಕಳದೊಳಿನಿಬರ ಕೊಂದು ಶಿವಶಿವ
ಕೆಲವು ದಿವಸದ ಸಿರಿಗೆ ಸೋಲಿದು
ಮುಳುಗುವೆನೆ ಭವಸಿಂಧುವಿನೊಳಾನೆನುತ ಮನಮುರಿದ ೨೯

ಇದಿರುಗಾಣದೆ ಕೊಲೆಗೆ ನಿರ್ಬಂ
ಧದಲಿ ಬೆಸಸುವ ಕೃಷ್ಣನಕಟಾ
ಮದಮುಖನೊ ದುರ್ಬೋಧಕನೊ ವಂಚಕನೊ ಘಾತಕನೊ
ಯದುಗಳನ್ವಯದೊಳಗೆ ಕರುಣಾ
ಸ್ಪದರು ಜನಿಸರಲಾ ಮುರಾರಿಯ
ಹೃದಯ ಬೆಟ್ಟಿತೆನುತ್ತ ಫಲುಗುಣ ತೂಗಿದನು ಶಿರವ ೩೦

ನರಕಕರ್ಮವ ಮಾಡಿ ಇಹದೊಳು
ದುರಿತ ಭಾಜನನಾಗಿ ಕಡೆಯಲಿ
ಪರಕೆ ಬಾಹಿರನಾಗಿ ನಾನಾಯೋನಿಯೊಳು ಸುಳಿದು
ಹೊರಳುವನುವನು ಕೃಷ್ಣದೇವನು
ಕರುಣಿಸಿದನೇ ಹಿತವನೇ ಹರ
ಹರ ಮಹಾದೇವೊಂದು ಬೋಳಕೆ ಬದುಕಿದೆನುಯೆಂದ ೩೧

ಮುಳಿಯಲಾಗದು ಕೃಷ್ಣ ನಿಮ್ಮನು
ತಿಳುಹಲಾನು ಸಮರ್ಥನೇ ಕುಲ
ಕೊಲೆಗೆ ಕೊಕ್ಕರಿಸಿದೆನು ನನೆದೆನು ಕರುಣ ವಾರಿಯಲಿ
ಬಲುಹನೀ ಮುಖದಲ್ಲಿ ತೋರುವ
ಡಳುಕಿದೆನು ಸಾಮ್ರಾಜ್ಯ ಸಂಪ
ತ್ತಿಳೆಯ ಸಂಕಲಭ್ರಾಂತಿ ಬೀತುದು ದೇವ ಕೇಳೆಂದ ೩೨

ಎಡಹಿದರೆ ರುಜೆಯಾಗಿಯಾಪ
ತ್ತಡಸಿದರೆ ಮೇಣಾವ ತೆರದಿಂ
ದೊಡಲುವಿಡಿದರೆ ಮರಣ ತಪ್ಪದು ಸುರರಿಗೊಳಗಾಗಿ
ಕೆಡುವ ಕಾಯವ ನಚ್ಚಿ ಬಂಧುಗ
ಳೊಡನೆ ವೈರವ ಮಸೆದು ನರಕಕೆ
ಕೆಡೆವನೇ ತಾನೆನುತ ರಥದೊಳು ಬಿಲ್ಲನಿಳುಹಿದನು ೩೩

ಕರಗಲಂತಃಕರಣ ಚಿಂತಾ
ತುರನು ಸಂಗ್ರಾಮದ ವಿರಕ್ತಿಯೊ
ಳಿರಲು ಕಂಡನು ಕಮಲನಾಭನು ನಗುತ ಮನದೊಳಗೆ
ತರಳನಿವನದ್ವೈತಕಲೆಯಲಿ
ಪರಿಣತನು ತಾನಲ್ಲ ನೆವದಿಂ
ನರನ ಬೋಧಿಸಬೇಕೆನುತ ನುಡಿಸಿದನು ಫಲುಗುಣನ ೩೪

ಏನು ಫಲುಗುಣ ಸಮರದಲಿ ದು
ಮ್ಮಾನವಾವುದು ಹದನು ಶೌರ್ಯಕೆ
ಹಾನಿಯಲ್ಲಾ ತ್ರಿಜಗಚೌಪಟಮಲ್ಲ ನೀನೆನಿಪ
ಮಾನಗರ್ವವು ಮುರಿಯದೇ ರಿಪು
ಸೇನೆ ನಗದೇ ತೆತ್ತ ಸಮರವ
ನೀನುಪೇಕ್ಷಿಸಿ ನೋಡಲಹುದೇ ಬಿಲ್ಲ ಹಿಡಿಯೆಂದ ೩೫

ಆವ ನಿನ್ನಯ ಕ್ಷತ್ರಧರ್ಮವ
ಭಾವಿಸಿದೆ ಮೇಣಾವ ಶಶಿವಂ
ಶಾವಳಿಯ ನೆಮ್ಮುಗೆಯ ನೆಗಳಿದೆ ತೆತ್ತ ಕಾಳೆಗಕೆ
ಅವ ನಿನ್ನಗ್ಗಳಿಕೆಗುಚಿತವ
ತೀವಿ ಬಯಸಿದೆ ಕದನಮುಖದಲಿ
ಹೇವ ವೀರರೊಳಿಲ್ಲಲಾ ವಿಸ್ಮಯವಿದಕಟೆಂದ ೩೬

ಅಲಗಿನೊರಸೊರಸಿಲ್ಲ ಕೈಮೈ
ಗಳಲಿ ಮುಳುಗಿದ ಬಾಣವಿಲ್ಲ
ಗ್ಗಳಿಸಿ ನೊಸಲಲಿ ಮುರಿದ ಭಲ್ಲೆಯವಿಲ್ಲ ನೋಡುವರೆ
ಕಲಹದಲಿ ಪಡಿಮುಖದ ಘಾಯದ
ಚಲರಕುತದೊರವಿಲ್ಲ ನೀ ಮು
ನ್ನಳುಕಿ ಕೈದುವ ಹಾಯ್ಕಿದೈ ಸರಿಯಲ್ಲ ನಿನಗೆಂದ ೩೭

ತರುಣಿಯರ ಮುಂದಸ್ತ್ರಶಸ್ತ್ರವ
ತಿರುಹಬಹುದುಬ್ಬೇಳಬಹುದ
ಬ್ಬರಿಸಬಹುದೆನಗಾರು ಸರಿ ನಾ ಧೀರನೆನಬಹುದು
ಕರಿತುರಗ ಬಹಳಶಸ್ತ್ರೋ
ತ್ಕರ ಕೃಪಾಣದ ಹರಹಿನಲಿ ಮೊಗ
ದಿರುಹದಿಹ ಕಲಿಯಾರು ಕುಂತೀಸೂನು ಕೇಳೆಂದ ೩೮

ಬಂಧುಹನನಕೆ ಮನದರಲು ಭವ
ವಿಂಧ್ಯದಲಿ ಬೆಳ್ಳಾಗಿ ರೌರವ
ಸಿಂಧುವಿನೊಳೋಲಾಡದಿಹನೇ ಪರಮಪಾತಕನು
ಸಂಧಿಯಲಿ ನಮ್ಮಾವನಿ ಋಣಸಂ
ಬಂಧವುಂಟೇ ಬರಲಿ ರಣದಭಿ
ಸಂಧಿ ಸಾಕಿನ್ನೆನುತ ಫಲುಗುಣ ಶಿರವ ಬಾಗಿದನು ೩೯

ಎಲವೊ ಫಲುಗುಣ ನುಡಿದ ಭಾಷೆಯ
ಸಲಿಸಿ ಕಾನನದೊಳಗೆ ತೊಟ್ಟನೆ
ತೊಳಲಿ ಹದಿಮೂರಬುದ ಬಂದಾಪತ್ತನನುಭವಿಸಿ
ನೆಲನ ಭಾಗವ ಬೇಡಿ ಸಂಧಿಗೆ
ಕಳುಹಿದರೆ ಕೌರವನು ನೂಕಿಸಿ
ಕಳೆದ ನಿಮಗಿನ್ನಾವ ಹೊಲ್ಲೆಹವೆಂದನಸುರಾರಿ ೪೦

ಎವಗೆ ನೀನುತ್ತರನ ಕಥೆವೇ
ಳುವೆ ನಗುವೆಯಾತನಿಗೆ ನೀನೀ
ಬವರದೊಳು ಗುರುವಾದೆ ಲೋಗರ ನಿಂದೆ ತನಗಹುದು
ಲವಲವಿಕೆಯಲಿ ಕಾದಬೇಕೆ
ಮ್ಮವನಿಯನು ಕೈಕೊಳಲುಬೇಕೆಂ
ಬವಗಡೆಯುತನವೆತ್ತಲಡಗಿತು ಪಾರ್ಥ ಹೇಳೆಂದ ೪೧

ಬಲುಹ ನೀ ನೋಡುವರೆ ಪರಮಂ
ಡಳಿಕರನು ತಂದೊಡ್ಡು ಬಳಿಕೆ
ನ್ನಳವನೀಕ್ಷಿಸು ಸೆಡೆದನಾದಡೆ ನಿಮ್ಮ ಮೈದುನನೆ
ಕೊಲುವೆನೆಂತೈ ಭೀಷ್ಮರನು ಮನ
ವಳುಕದೆಂತೈ ತಪ್ಪುವೆನು ಗುರು
ಗಳಿಗೆ ಕೃಪಗುರುಸುತರನಿರಿವುದಿದಾವ ನಯವೆಂದ ೪೨

ಹೊಳೆದು ಹೋಹೈಶ್ವರ್ಯಕೋಸುಗ
ತಲೆಯ ಮಾರಿಯಧರ್ಮ ಕೋಟಿಯ
ಫಳಿಸಿ ಬಳಿಕಾ ಫಲವನಲಸದೆ ಭವಭವಂಗಳಲಿ
ತೊಳಲಿ ಬಳಲುವ ಜೀವಭಾವದೊ
ಳುಳಿವುದಾವುದು ಲಾಗು ಮೂಢರ
ಬಳಕೆಗಾವಂಜುವೆವು ಸಮರಕೆ ಶರಣು ಶರಣೆಂದ ೪೩

ಲಾಲಿಸದೆ ಕುಲಛಲವ ನೀತಿಯ
ಪಾಲಿಸದೆ ಕೊಲೆಗಡುಕತನದೊಳು
ಮೇಲುಗಾಣದೆ ಬಂಧುಗಳ ಗುರುಗಳ ಸಹೋದರರ
ಕೋಲ ಮೊನೆಯಲಿ ಕೊಂದು ನೆತ್ತರ
ಗೂಳನುಂಬವೊಲಖಿಳ ರಾಜ್ಯದ
ಮೇಲೆ ಸೊಗಸುವ ಸಿರಿಯನೊಲ್ಲೆನು ಕೊಲುವನಲ್ಲೆಂದ ೪೪

ಆರನೈ ನೀ ಕೊಲುವೆ ನಿನ್ನಿಂ
ದಾರು ಸಾವರು ದೇಹವನೊ ನಿಜ
ಧೀರನಾತ್ಮನ ಕೊಲುವೆಯೊ ದಿಟ ನಿನ್ನ ಬಗೆಯೇನು
ಚಾರುದೇಹಕೆ ಭೂತ ನಿಕರಕೆ
ವೈರವಿಲ್ಲುಳಿದಂತೆ ವಿಗತವಿ
ಕಾರನಚಲನಗಮ್ಯನದ್ವಯನಾತ್ಮ ನೋಡೆಂದ ೪೫

ತನುವಳಿದ ಬಳಿಕಿನಲಿ ತನು ಸಂ
ಜನಿಸುಗೆಂಬುದು ಭವವ ಬಳಸುವ
ತನುವಿನಲಿ ಕೌಮಾರ ಯೌವನ ವಾರ್ಧಿಕಂಗಳಲಿ
ತನು ವಿಕಾರಿಸುವದು ಸುಕರ್ಮದ
ವಿನುತ ದುಷ್ಕೃತವೆನಿಪ ಹುಸಿ ಕ
ಲ್ಪನೆ ಶರೀರಕ್ಕಲ್ಲದಾತ್ಮಂಗಿಲ್ಲ ಕೇಳೆಂದ ೪೬

ಅಳಿವನಲ್ಲುಂದಯಿಸುವನಲ್ಲ
ಗ್ಗಳಿಸುವವನಲ್ಲಡಗುವವನ
ಲ್ಲಳಿವ ದೇಹದ ಬಗೆಗೆ ಹೊಣೆಯೇ ಸಚ್ಚಿದಾತ್ಮಕನು
ಕಳಚಿದಡೆ ಕಳಚುವುದು ಕಾಯುವಿ
ದುಳಿದಡುಳಿವುದು ಚಿನುಮಯಂಗೀ
ಕಳಕಳದ ಕಾಲಾಟ ಕೊಳ್ಳದು ಪಾರ್ಥ ಕೇಳೆಂದ ೪೭

ನಿನಗೆ ಸಾವವನಲ್ಲ ನಿನ್ನಂ
ಬಿನಲಿ ನೋವವನಲ್ಲ ದಿಟ ನೀ
ಮುನಿದು ಗಗನಕ್ಕಲಗನುಗಿದಡೆ ಗಗನವಳುಕುವುದೇ
ತನುವಿನೀ ಗುಣಧರ್ಮ ಕರ್ಮದ
ಹೊನಲು ಹೊಗುವುದೆ ನಿತ್ಯನಿರ್ಮಲ
ಚಿನುಮಯಾತ್ಮನನೆಲೆ ವೃಥಾಹಂಕಾರವೇಕೆಂದ ೪೮

ಆದಡೆಲೆ ಮುರವೈರಿ ಕೇಳಿದಿ
ರಾದ ಬಾಂಧವರನಿಬರನು
ಕಾದಿ ಕೊಂದನು ಪಾರ್ಥ ಪಾತಕನೆನ್ನದೇ ಲೋಕ
ಈ ದುರಂತಕ್ಕೇನುಗತಿಯಪ
ವಾದವಾವಂಗಾದುದಾತನ
ವೈದಿಕನು ಇಹಪರಕೆ ಬಾಹಿರನೆಂದನಾ ಪಾರ್ಥ ೪೯

ಮರುಳೆ ಫಲುಗುಣ ಕೇಳು ಸೂರ್ಯನ
ಕಿರಣ ಹೊಲೆಯನ ಚರಿಸಿದರೆ ಹೊಲೆ
ಹೊರುವುದೇ ಸ್ನಾನದಲಿ ವಿಧಿಸಲು ಬಹುದೆ ನೋಡಿದನ
ಪರಮತತ್ತ್ವಜ್ಞಾನ ನಿಷ್ಠನ
ಚರಿತವೇ ಸುಚರಿತ್ರವಾತಂ
ಗಿರದು ಕೇಳು ಸುಕರ್ಮದುಷ್ಕಾರ್ಮಾದಿ ಗುಣಲೇಪ ೫೦

ಕೊಂದೆ ನಾನೆನಗಾಯ್ತು ಪಾತಕ
ವೆಂದು ಮನದಲಿ ಮರುಗುವಾತನ
ಬಂದಿಯಲಿ ಹೊಣೆಗೊಂಬವಾಹಂಕಾರ ಮಮಕಾರ
ಕಂದು ಕಲೆ ತನಗೆತ್ತಣದು ನಿ
ರ್ದ್ವಂದ್ವಕನು ಮೃತ ಜಾತ ತಾನ
ಲ್ಲೆಂದು ಕಂಡರವಂಗೆ ಪಾಪವಿಲೇಪವಿಲ್ಲೆಂದ ೫೧

ಹರಿಯೆ ಚಿತ್ತಯಿಸೈಯಹಿಂಸಾ
ಪರಮಧರ್ಮವು ಎಂಬ ವಾಕ್ಯದ
ಸರಣಿ ಸಾರೋದ್ಧಾರವಲ್ಲಾ ಸಕಲದರುಶನಕೆ
ನೆರವಿಯಿನಿಬರ ತನ್ನವರ ಕೊರ
ಳರಿತದಲಿ ಕೊಕ್ಕರಿಸದಿರ್ದಡೆ
ನರಕದೊಳು ನೂರೊಂದು ಕುಲ ಮುಳುಗಾಡದಿರದೆಂದ ೫೨

ನಿರುತವರ್ಜುನ ಕೇಳಹಿಂಸಾ
ಪರಮಧರ್ಮದ ತತ್ಸ್ವರೂಪವ
ನೊರೆವೆನಾಲಿಸು ಸಚ್ಚಿದಾನಂದೈಕಘನವೆನಿಪ
ನಿರುಪಮಾತ್ಮನ ನಿಲವನರಿಯದೆ
ನರಕಿ ಜಡನಾ ಜೀವವೆಂಬೀ ೫೩
ತರಳತನವೇ ಹಿಂಸೆಯರಿವಡಹಿಂಸೆ ಕೇಳೆಂದ

ನೆರವಿ ಬೇರೊಂದಿಲ್ಲ ಭೂತದ
ಪರಹು ಕರಣೇಂದ್ರಿಯದ ಸಂದಣಿ
ಮರುತ ಪಂಚಕ ಬುದ್ಧಿ ಕರ್ಮೇಂದ್ರಿಯದ ಕಾಲೆಣಿಕೆ
ನೆರೆಯಲೊಂದಾಗಿಹುದು ಕಲ್ಪನೆ
ಹರೆದು ಜೀವಭ್ರಾಂತಿ ಬೀತಡೆ
ಪರಮ ತಾನಿಹನಲ್ಲಿ ಕೊಲುವರೆ ಸಾವನಲ್ಲೆಂದ ೫೪

ಕರ್ಮವೇ ಪೂಡುವುದು ತನುವನು
ಕರ್ಮವೇ ಸಲಹುವುದು ಕಡೆಯಲಿ
ಕರ್ಮವೇ ಕಳಚುವುದು ಜೀವಭ್ರಮೆಯ ಬಾಹಿರರ
ಕರ್ಮ ತಾನೇನಾದಡಾಗಲಿ
ನಿರ್ಮಮತೆಯಲಿ ಮಾಡಿ ನಮ್ಮಲಿ
ನಿರ್ಮಿಸಲು ಕಲಿಪಾರ್ಥ ನೀ ನಿರ್ಲೇಪನಹೆಯೆಂದ ೫೫

ಅಸುರರಿಪು ಕೇಳಾದಿಯಲಿ ಬಂ
ಧಿಸಿದ ಕರ್ಮವು ಜೀವರನು ಬಂ
ಧಿಸಲು ತದ್ಗುಣದೋಷ ಕರ್ತೃವನೇಕೆ ತಾಗುವುದು
ಪಸರಿಸಿತಲಾ ಸ್ಮಾರ್ತ ಮಾರ್ಗ
ಪ್ರಸರ ಕೊಂಡಡೆ ಪಾಪ ಪಾವನ
ವೆಸಗೆ ಪುಣ್ಯವೆನಿಪ್ಪ ವಿವರಕ್ಕೇನು ನೆಲೆಯೆಂದ ೫೬

ಸುಕೃತ ದುಷ್ಕೃತವೆಂಬವೇ ಬಾ
ಧಕವು ಜೀವರಿಗೀಯಹಂಕೃತಿ
ವಿಕಳತೆಗೆ ತಾ ಬೀಜ ಜನ್ಮದ ಚುಟ್ಟುಮುರಿಗಳಿಗೆ
ಸಕಲಕರ್ತೃತ್ವಾದಿ ಭೋಕ್ತೃ
ತ್ವಕವಿದಾತ್ಮಂಗಿಲ್ಲ ಪಿತ್ಥಾ
ಧಿಕನು ತಿರುಗುತ ಲೋಕ ತಿರುಗುವುದೆಂಬ ತೆರನಂತೆ ೫೭

ಮರುಳೆ ಫಲುಗುಣ ಕೇಳು ಸಚರಾ
ಚರವೆನಿಪ ಜಗವೆನ್ನ ಲೀಲಾ
ಚರಿತದಲಿ ತೋರುವುದು ಹರೆವುದು ನನ್ನ ನೇಮದಲಿ
ನಿರುತ ನೀ ಕೇಳುವರೆ ತಿರ್ಯಕ್
ನರಸುರಾದಿಗಳೆಂಬ ಸಚರಾ
ಚರವಿದಾನಲ್ಲದೆ ವಿಚಾರಿಸಲನ್ಯವಿಲ್ಲೆಂದ ೫೮

ಜಗದೊಳಾನೇ ಚರಿಸುವೆನು ತ
ಜ್ಜಗವಿದೆಲ್ಲವು ನನ್ನ ಮಾಯೆಯೊ
ಳೊಗೆದು ತೋರಿಸಿ ಸುಳಿಸೆ ಸುಳಿವುದು ಹಿಡಿಯಲಡಗುವುದು
ಮುಗುವುತನದೊಳು ಕೂಡಿ ಮೆರೆವುದು
ಜಗವದಲ್ಲದೆ ನಿಜವ ಬೆರಸುವ
ವಿಗಡರಿಗೆ ಪರತತ್ವ ಚಿನುಮಯರೂಪ ತಾನೆಂದ ೫೯

ಬೀಸಿದರೆ ಸಿಲುಕುವರು ಮಾಯಾ
ಪಾಶದೊಳಹಂಕಾರಿಗಳು ತ
ದ್ದೇಶಕಾಲಕ್ರಿಯೆಗಳಲಿ ನಿರ್ವಾಹವನು ಬೆದಕಿ
ಬೇಸರುವರಂತಿರಲಿ ಮಾಯಾ
ವೈಸಿಕದ ಸಮ್ಮೋಹನದ ಕಾ
ಳಾಸವರಿವವರೆನ್ನನರಿವರು ಪಾರ್ಥ ಕೇಳೆಂದ ೬೦

ಏಕನಾತ್ಮನನಂತನಚಲನ
ಶೋಕನದ್ವಯನಮಲನಭವನ
ಲೋಕನಿಸ್ಪೃಹನಮಿತನಕ್ರಿಯನಹತನಭ್ರಮನು
ಲೋಕಗತಿ ಮಾಯಾವಿಲಾಸ ವಿ
ವೇಕಿಗಳಿಗಿದು ಬಯಲು ಫಲುಗುಣ
ಸಾಕು ಗರ್ವವ ಬೀಳುಕೊಡು ಸೆಳೆ ಶರವ ಹಿಡಿ ಧನುವ ೬೧

ಜಡನಲಾ ನರನೇಸ ತಿಳುಹಲು
ಬಿಡ ವಿಕಾರವನೆಂದು ಖಾತಿಯ
ಹಿಡಿಯಲಾಗದು ಸಲುಗೆಗಂಜಿಕೆಯೇಕೆ ಬಿನ್ನಹವು
ಬಿಡು ಜಗೌಘಾನೀಕ ನಿಮ್ಮಡಿ
ಯೊಡಲೊಳಗಣಿತವಿಹವು ಗಡ ಮಿಗೆ
ನುಡಿಯಲಮ್ಮೆನು ತತ್ಸ್ವರೂಪವ ತೋರಬೇಕೆಂದ ೬೨

ಈ ದಿವಿಜರೀ ಚಂದ್ರ ಸೂರಿಯ
ರೀ ದಿಶಾವಳಿಯೀ ಗಗನವೀ
ಮೇದಿನೀತಳವೀ ಸಮೀರಣನೀ ಜಲಾನಲರು
ಈ ದನುಜರೀ ಮನುಜರೀ ನೀ
ನಾದಿಯಾಗಿಹ ಹರಹು ನಿನ್ನ ವಿ
ನೋದರೂಪಿನ ನಿರುಗೆಯನು ನೀ ತೋರಬೇಕೆಂದ ೬೩

ಹರೆದು ಮೋಹಿಸುವೀ ಚರಾಚರ
ನೆರೆದು ನಿಮ್ಮಯ ರೋಮಕೂಪದ
ಹೊರೆಯೊಳಗೆ ಹೊಳೆದಾಡುತಿಹುದೆಂಬಗ್ಗಳಿಕೆಗಳಿಗೆ
ಹುರುಳೆನಿಪ ಹೇರಾಳದಂಗದ
ಸಿರಿಯ ತೋರೈ ಕೃಷ್ಣ ನಿರ್ಮಲ
ಪರಮತತ್ವವನೊಲ್ಲೆ ನಿಮ್ಮಯ ಭಕ್ತಿ ಸಾಕೆಂದ ೬೪

ದಾಸನಾನೆನಗಮಲಮೂರ್ತಿ ವಿ
ಲಾಸವನು ತೋರುವುದು ಸಲಹುವು
ದೈಸರವನೈ ತಾನು ಸಮ್ಯಗ್‌ಜ್ಞಾನಭಾಜನಕೆ
ಮೀಸಲಳಿಯದ ಮಿಕ್ಕ ಬಯಕೆಯು
ಪಾಶ ತಾಗದ ನಿನ್ನ ಲೀಲೆಯ
ಭಾಸುರ ಶ್ರೀಮೂರ್ತಿಯನು ಮೈದೋರಬೇಕೆಂದ ೬೫

ಆದಡರ್ಜುನ ನೋಡೆನುತ ಕಮ
ಲೋದರನು ಕೈಕೊಂಡನಗ್ಗದ
ನಾದಿಪುರುಷ ಶ್ರೀನಿಜವ ವಿಶ್ವಾತ್ಮಕಾಕೃತಿಯ
ವಾದಿಸುವ ಷಟ್ತರ್ಕಗಿರ್ಕದ
ಭೇದ ಕೊಳ್ಳದ ಸಕಲ ಲೋಕದ
ಬೀದಿ ವಿಸಟಂಬರಿವ ವಿಮಲ ವಿರಾಟ ರೂಪವನು ೬೬

ಬಿಳಿದು ಕರಿದೆಂಬಾರು ವರ್ಣದ
ಹೊಲಬು ಹೊದ್ದದ ಸೂರ್ಯಕೋಟಿಯ
ಹೊಳಹು ನಖದೀಧಿತಿಯ ಹೋಲದ ನಿಜದ ಹೊಸಪರಿಯ
ಅಳವಿನಳತೆಯ ಜಗದ ವಾರ್ತೆಯ
ಸುಳಿವು ಸೋಂಕದ ಸಕಲ ಲೋಕ
ಪ್ರಳಯ ಕಾರಣ ತೆಗೆದನಗ್ಗದ ವಿಶ್ವರೂಪವನು ೬೭

ಕಾಣರುಳಿದವರೀತನೊಬ್ಬನ
ಕಾಣಿಕೆಗೆ ಕೌತುಕವ ಕರೆದನು
ಶೋಣಿತಾಮಲಬಹಳತೇಜದ ಹೊದರ ಹೊಯಿಲಿನಲಿ
ಕಾಣಲರಿಯವನಂತವೇದ
ಶ್ರೇಣಿ ಶಿವಶಿವ ರಾಯ ಪಾರ್ಥನ
ಜಾಣತನವೆಂತುಟೊ ವಿರೂಪನ ರೂಪ ಸೆರೆವಿಡಿದ ೬೮

ಉಬ್ಬಿದನು ಹರುಷದಲಿ ಕಂಗಳ
ಗಬ್ಬ ಮುರಿದುದು ಮದದ ನಿಗುರಿನ
ಹಬ್ಬುಗೆಯು ಹೊಲಬಳಿಯೆ ನಾಲಗೆಯುಡುಗೆ ಹೆಡತಲೆಗೆ
ಸಬ್ಬಗತನೈ ಶಿವಶಿವಾ ಬಲು
ಮಬ್ಬಿನಲಿ ಮುಂದರಿಯದೆನ್ನಯ
ಕೊಬ್ಬನೇವಣ್ಣಿಸುವೆನೆನುತಡಿಗಡಿಗೆ ಬೆರಗಾದ ೧೯

ಇದೆ ನಿರಂಜನತತ್ವ ಸಾಮ್ರಾ
ಜ್ಯದ ಸಘಾಟಿಕೆ ನಾವು ಕಡು ಮೂ
ರ್ಖದಲಿ ಮೈಮರೆದೆವು ಶರೀರದ ಬಂಧುಕೃತ್ಯದಲಿ
ಯದುಗಳನ್ವಯದಾತ ನಮಗೊ
ಳ್ಳಿದನು ಸೋದರಭಾವನೆಂದೇ
ಮದಮುಖದಿ ಕಡುಗೇಡ ಕೆಟ್ಟೆನು ಶಿವಶಿವಾಯೆಂದ ೨೦

ಪರುಷ ಕಲ್ಲೆಂದಳುಕಿ ಸುರತರು
ಮರನು ತೆಗೆಯೆಂದಮರಧೇನುವ
ಪರರ ಮನೆಯಲಿ ಮಾರಿ ಚಿಂತಾಮಣಿಗೆ ಕೈದುಡುಕಿ
ಹರಳು ತೆಕ್ಕೆಯಿದೆಂಬ ಪಾಪಿಗೆ
ಪರಮಗುರು ನಾನಾದೆನೈ ಮುರ
ಹರನ ಮೈದುನನೆಂದು ಗರ್ವಿಸಿ ಕೆಟ್ಟೆನಕಟೆಂದ ೨೧

ನೊರಜು ತಾನೆತ್ತಲು ಮಹತ್ವದ
ಗಿರಿಯದೆತ್ತಲು ಮಿಂಚು ಬುಳುವಿನ
ಕಿರಣವೆತ್ತಲು ಹೊಳಹಿದೆತ್ತಲು ಕೋಟಿ ಸೂರಿಯರ
ನರಮೃಗಾಧಮನೆತ್ತಲುನ್ನತ
ಪರಮತತ್ವವಿದೆತ್ತಲಕಟಾ
ಮರುಳು ನನ್ನವಗುಣವದಾವುದ ಕಡೆಗೆ ಹಲುಬುವೆನು ೨೨

ಮೇಳ ಗಡ ನಮಗೀತನಲಿ ಭೂ
ಪಾಲಕರು ಗಡ ನಾವು ಸಾರಥಿ
ಯಾಳು ಗಡ ಹರಿ ನಾವು ವೀರರು ಗಡ ವಿಚಿತ್ರವಲ
ಮೇಲುಗಾಣದ ಪಾರ್ಥನೆಂಬೀ
ಕಾಳುಮೂಳನ ವಿಧಿಯನೇಪರಿ
ಕೇಳುವೆನು ಹರಯೆನುತ ಕಂಗಳನೆವೆಗಳಲಿ ಬಿಗಿದ ೨೩

ಅಡಿಗಡಿಗೆ ಕಣ್ದೆರೆದು ಮುಚ್ಚುವ
ನಡಿಗಡಿಗೆ ಮೈಬೆದರಿ ಬೆರಗಹ
ನಡಿಗಡಿಗೆ ಮೆಯ್ಯೊಲೆವನುಬ್ಬಿದ ರೋಮ ಪುಳಕದಲಿ
ಅಡಿಗಡಿಗೆ ಮನನಲಿದು ಹೊಂಗುವ
ನಡಿಗಡಿಗೆ ಭಯಗೊಂಡು ಕರಗುವ
ನೊಡಲನವನಿಗೆ ಹರಹಿ ನಿಡುದೋಳುಗಳ ನೀಡಿದನು ೨೪

ಮುರಹರ ತಾಯಸ್ವ ಕರುಣಾ
ಕರ ಪರಿತ್ರಾಯಸ್ವ ಲಕ್ಷ್ಮೀ
ವರ ಪರಿತ್ರಾಯಸ್ವ ದನುಜಾಂತಕ ಪರಿತ್ರಾಹಿ
ಚರಣಭಜಕ ಕುಟುಂಬಕನೆ ಘನ
ದುರಿತ ವಿಪಿನ ಕೃಶಾನುವೇ ಭವ
ಹರ ನಿರೀಕ್ಷಿಸು ರಕ್ಷಿಸೆನ್ನನೆನುತ್ತ ಹೊರಳಿದನು ೨೫

ದೇವ ಭಕ್ತಜನಾರ್ತಪಾಲಕ
ದೇವ ಬಹಳ ಕೃಪಾಮಹಾರ್ಣವ
ದೇವ ಸರ್ವೇಶ್ವರ ಸದಾತ್ಮಕ ಸಕಲ ನಿಷ್ಕಳನೆ
ಸೇವಕರಲಾರೈವರೇ ಸುಗು
ಣಾವಗುಣವನು ನಿಮ್ಮ ಭೃತ್ಯನ
ಭಾವ ಬೆಚ್ಚಿತು ವಿಶ್ವರೂಪವ ಬೀಳುಕೊಡಿಯೆಂದ ೨೬

ಲೋಕವರಿಯಲನಂತವೇದವು
ಮೂಕನಾದವು ಜೀಯ ಜಡನವಿ
ವೇಕಿ ಮಾನವ ಮಶಕವಿದು ನಿಮ್ಮಳತೆಗೈದುವುದೇ
ಸಾಕ್ಷಿಕೊಳ್ಳೈ ಕೃಷ್ಣ ನೋಡಲು
ನೂಕದೆನ್ನೆವೆ ಸೀವುತಿವೆ ಕರು
ಣಾಕರನೆ ಕೈಗಾವುದೈ ಕೃಪೆ ಮಾಡಬೇಕೆಂದ ೨೭

ಎಳನಗೆಯ ಸಿರಿಮೊಗದ ಚೆಲುವಿನ
ಹೊಳೆಹೊಳೆವ ನಿಟ್ಟೆಸಳುಗಂಗಳ
ತೊಳಪ ಕದಪಿನ ಮಿಸುಪ ಕಾಂತಿಯ ಮಕರಕುಂಡಲದ
ಲಲಿತಕಂಠದ ಕೌಸ್ತುಭೋರ
ಸ್ಥಳದ ನಿಡುದೋಳುಗಳ ಕೋಮಲ
ತಳಿತ ಪೀತಾಂಬರದ ಮುನ್ನಿನ ರೂಪ ತೋರೆಂದ ೨೮

ಅಳಕ ನಿಚಯದ ಕುಂಭಿನೊಸಲಿನ
ತಳಿತೆವೆಯ ನಿಡುಹುಬ್ಬುಗಳ ಕೋ
ಮಲ ಸುಮುಕ್ತಾಫಲಕೆ ಸೆಣಸುವ ದಂತಪಂಕ್ತಿಗಳ
ಲಲಿತಚುಬುಕದ ಚಾರುತರ ಕೆಂ
ದಳದ ಸುಳಿನಾಭಿಯ ಸವರ್ತುಳ
ವಿಳಸಿತೋರುದ್ವಯದ ಮುನ್ನಿನ ರೂಪ ತೋರೆಂದ ೨೯

ಪರಮ ಚಿನುಮಯ ನೀನು ಕರ್ಮದ
ಸರಣಿಯೆನ್ನದು ನೀ ಚರಾಚರ
ಭರಿತ ಭಾರಿಯ ವಿಶ್ವಮಯನವ್ಯಕ್ತನದ್ವಯನು
ನರನ ಮತಿಯಿದು ಮಂದಮತಿ ಗೋ
ಚರಿಸಲರಿವುದೆ ದೇವ ಕರುಣಿಸು
ಕರುಣಿಸೈ ಮೈದೋರು ತನ್ನೊಡನಾಡಿತನದನುವ ೩೦

ನಳಿನನಾಭ ಮುಕುಂದ ಮಂಗಳ
ನಿಳಯ ಭಕ್ತವ್ಯಸನಿ ದೈತ್ಯ
ಪ್ರಳಯ ಪಾವಕ ಭಕ್ತವತ್ಸಲ ಭಕ್ತ ಸುರಧೇನು
ಲಲಿತಮೇಘಶ್ಯಾಮ ಸೇವಕ
ಸುಲಭ ಶೌರಿ ಮುರಾರಿ ಭಕ್ತಾ
ವಳಿ ಕುಟುಂಬಕ ಕೃಷ್ಣ ಕೇಶವ ಕರುಣಿಸೆನಗೆಂದ ೩೧

ಪರಮಪುಣ್ಯಶ್ಲೋಕ ಪಾವನ
ಚರಿತ ಚಾರುವಿಲಾಸ ನಿರ್ಮಲ
ವರ ಕಥನ ಲೀಲಾ ಪ್ರಯುಕ್ತ ಪ್ರಕಟ ಭುವನಶತ
ನಿರವಯವ ನಿರ್ದ್ವಂದ್ವ ನಿಸ್ಪೃಹ
ನಿರುಪಮಿತ ನಿರ್ಮಾಯ ಕರುಣಾ
ಕರ ಮಹಾತ್ಮ ಮನೋಜವಿಗ್ರಹ ಕರುಣಿಸೆನಗೆಂದ ೩೨

ದೇವ ಲಕ್ಷ್ಮೀಕಾಂತ ವರರಾ
ಜೀವಲೋಚನ ಭೂತಭಾವನ
ರಾವಣಾಂತಕ ಗೋಪವೇಷ ವಿಲಾಸ ಜಯವಾಸ
ದೇವಕೀನಂದನ ಯಶೋದಾ
ದೇವಿಯುನ್ನತಪುಣ್ಯಫಲ ತಲೆ
ಗಾವುದೈ ತರುವಲಿಗೆ ತೋರ್ದೈ ಮುನ್ನಿನಾಕೃತಿಯ ೮೩

ನಿಗಮನಿಕರವ ಸೆಳೆವ ತಿರುಗುವ
ನಗಕೆ ಬೆನ್ನನು ಕೊಡುವ ಜಲನಿಧಿ
ಮಗುಚೆ ಮಹಿಯನು ಮೊಗೆವ ಮಗುವಿನ ನುಡಿಗೆ ಮೈಗೊಡುವ
ಗಗನಕಂಘ್ರಿಯನಿಡುವ ತಾಯ
ಕ್ಕೈಗಳಿಗಕ್ಕೆಯ ತೋರ್ಪ ರಾಣೆಯ
ಸೊಗಸ ಸಲಿಸುವ ಕೃಪೆಯನೆನ್ನಲಿ ತೋರಬೇಕೆಂದ ೮೪

ಮರೆದು ನಾಲಗೆಗೊನೆಗೆ ನಾಮದ
ನಿರುಗೆ ನೆಲೆಗೊಳೆ ನಿನ್ನನೇ ಸಲೆ
ತೆರುವ ಬಿರುದನು ಬಲ್ಲೆನೊರಲಿದು ನಿನ್ನ ಹಲುಬಿದರೆ
ಉರುವ ಹೆಂಗುಸಿನುನ್ನತಿಕೆಯಲಿ
ಸೆರಗು ಬೆಳೆದುದ ಕಂಡೆನೈ ಸೈ
ಗರೆವುದೈ ಕಾರುಣ್ಯವರುಷವನೆನ್ನ ಮೇಲೆಂದ ೮೫

ಹಸುಳೆಗಮರಾಚಲದ ಹೊರೆ ಸೈ
ರಿಸುವುದೇ ಮರಿಹುಲ್ಲೆ ಸಿಂಹದ
ಮುಸಕಕಿದಿರೇ ಲತೆಯ ಎಳಗುಡಿ ಮಾಳಿಗೆಗೆ ತೊಲೆಯೆ
ಸಸಿದರಳೆ ಸಿಡಿಲೆರಗಿದರೆ ಜೀ
ವಿಸುವುದೇ ನಿಮ್ಮಡಿಯ ವಿಶ್ವ
ಪ್ರಸರರೂಪಿಂಗಾನು ಲಕ್ಷ್ಯವೆ ಸಲಹಬೇಕೆಂದ ೮೬

ಅಣಲೊಳಷ್ಟಾದಶ ಮಹಾಕ್ಷೋ
ಹಿಣಿಗಳಡಗಿದವೆಂಬುದಿದು ಭೂ
ಷಣವೆ ಜೀಯ ಮುರಾರಿ ನಿನ್ನಯ ರೋಮಕೂಪದಲಿ
ಗಣನೆಗೆಟ್ಟ ಜರುದ್ರಸುರಸಂ
ದಣಿಗಳಿವೆ ಜಠರದ ಜಗಂಗಳ
ನೆಣಿಸಬಲ್ಲವರಾರು ಸಾಕಿನ್ನೆನ್ನ ಸಲಹೆಂದ ೮೭

ವಿಶ್ವ ನಿನ್ನಯ ಮಾಯೆ ನಿರ್ಮಲ
ವಿಶ್ವರೂಪನು ನೀನು ಬಗೆವಡೆ
ವಿಶ್ವ ನಿನ್ನೊಳು ಸುಳಿವುದಳಿವುದು ಲಲಿತಲೀಲೆಯಲಿ
ವಿಶ್ವವಲ್ಲಭ ನೀನು ನಿನ್ನದು
ವಿಶ್ವಪಾಲನೆ ವಿಶ್ವಚೇಷ್ಟಕ
ವಿಶ್ವದಾಧಾರನೆ ಜಡಾತ್ಮನ ಸಲಹಬೇಕೆಂದ ೮೮

ವೀರ ದೈತ್ಯಕುಠಾರ ಗಳಿತವಿ
ಕಾರ ಗೋಪೀಜಾರ ಲಲಿತವಿ
ಹಾರ ನಿಗಮವಿದೂರ ಸುಖಸಾಕಾರ ಗತಪಾರ
ಧೀರ ಜಗದಾಧಾರ ಲಸದಾ
ಚಾರ ಕಮಲಾಗಾರ ಭುವನಾ
ಧಾರ ನಿರ್ಜಿತಮಾರ ಮುರಹರ ಸಲಹಬೇಕೆಂದ ೮೯

ಭಯದ ಬಿಗುಹಿನ ಭಾರ ಭಕುತಿಯ
ನಯದ ಬಿನ್ನಹದೋಜೆಯನು ಚಿನು
ಮಯನು ಕೇಳಿದು ಮೆಚ್ಚಿ ಡಿಂಗರಿಗಂಗೆ ನಗುತೆಂದ
ನಿಯತವೇ ನೀನಲ್ಲಲೇ ಸೇ
ನೆಯನು ಕೊಲುವನು ಕಾವವನು ನಿ
ಶ್ಚಯವ ನಿನ್ನೊಳು ತಿಳಿದು ಬಿನ್ನಹ ಮಾಡು ಸಾಕೆಂದ ೯೦

ಎನಿತು ಜಗವಡಗಿದವು ಕೌರವ
ರೆನಿಬರಡಗಿತು ನೋಡು ಧರ್ಮನ
ತನಯ ಭೀಮಾರ್ಜುನರು ಭೀಷ್ಮದ್ರೋಣ ಮೊದಲಾದ
ಎನಿಬರಡಗಿತು ಬಾಂಧವ
ಹನನ ನಿನಗುಂಟಾದಡೀಗಳೆ
ನೆನೆದು ಬಿನ್ನಹ ಮಾಡೆನುತ ಪಾರ್ಥಂಗೆ ಹರಿ ನುಡಿದ ೯೧

ಗುರುಗಳಿಗೆ ನಾ ತಪ್ಪೆನೆಂದೇ
ಮುರಿದಡೆನಗದು ಖ್ಯಾತಿ ಭೀಷ್ಮನು
ವರಪಿತಾಮಹನೆಂದು ಹೊಳೆದರೆ ಬಳಿಕಸತಹ್ಯವದು
ಅರಿಬಲವು ಮುನ್ನರಿವುದೋ ನೀ
ನರಿವೆಯೋ ಲೇಸಾಗಿ ಎನ್ನೊಳು
ನರ ನಿರೀಕ್ಷಿಸೆನುತ್ತ ನುಡಿದನು ದಾನವಧ್ವಂಸಿ ೯೨

ನೆನೆದಡಜಕೋಟಿಗಳು ನಿಮ್ಮಯ
ಮನದೊಳಗೆ ಜನಿಸುವರುಪೇಕ್ಷೆಯೊ
ಳನಿತು ಕಮಲಜರಳಿವರೆಂದರೆ ನಿಮ್ಮ ಮಹಿಮೆಯನು
ನೆನೆಯಲಳವೇ ಜೀಯ ಸಾಕಿ
ನ್ನನುವರದೊಳೆನಗೇನ ಬೆಸಸಿದ
ರನಿತ ತಾ ಮುಖದಿರುಹಿದರೆ ಡಿಂಗರಿಗನಲ್ಲೆಂದ ೯೩

ಮರಳಿ ಮುನ್ನಿನ ರೂಪನಂಗೀ
ಕರಿಸಿ ವಾಘೆಯ ಕೊಂಡು ತುರಗವ
ತಿರುಹಿ ಲುಳಿವಡೆಸುತ್ತ ಪಾರ್ಥಗೆ ಮಾಯೆಯನು ಬೀಸಿ
ಶರ ಧನುವ ಕೊಳ್ಳೇಳು ಕೈಕೋ
ಪರಬಲದ ತೋಟಿಯನು ತೋರೈ
ಬಿರುದ ಘಾತಕತನವನೆಂದನು ನಗುತ ಮುರವೈರಿ ೯೪

ಮೋಹ ಮಿಗೆ ಪಾಂಡವ ಮಮ ಪ್ರಾ
ಣಾಹಿಯೆಂಬೀ ಬಿರುದ ಸಲಿಸಲು
ಗಾಹಿನಲಿ ಮೇದಿನಿಯ ತಿಣ್ಣವನಿಳುಹಲೋಸುಗರ
ಆಹವದೊಳರ್ಜುನನ ರಥದೊಳು
ವಾಹಕನು ತಾನಾಗಿ ಶರಣ
ಸ್ನೇಹ ಸಂಸಾರಾನುರಾಗನು ಸುಳಿಸಿದನು ರಥವ ೯೫

ನಾಲ್ಕನೆಯ ಸಂಧಿ

ಸೂ. ಕವಿದು ಹಳಚಿದುದುಭಯಬಲ ಶಿವ
ಶಿವ ಮಹಾದೇವಮಮ ಪದರಜ
ರವಿಯ ತಿವಿದುದು ದಿನವನಳಿದುದು ನಳಿದನಹಿರಾಯ

ಅವಧರಿಸು ಧೃತರಾಷ್ಟ್ರ ಗಂಗಾ
ಭವನ ಸುಯಿಧಾನದಲಿ ಕುರುಬಲ
ನಿವಹ ಧೃಷ್ಟದ್ಯುಮ್ನನಾರೈಕೆಯಲಿ ರಿಪುಸೇನೆ
ತವಕ ಮಿಗೆ ಮೋಹರಿಸಿ ಕೈವೀ
ಸುವ ಮಹೀಶರನೀಕ್ಷಿಸುತಲಾ
ಹವ ಮಹೋದ್ಯೋಗಕ್ಕೆ ಬೆರಗಾಯಿತ್ತು ಸುರಕಟಕ ೧

ಎರಡು ಬಲ ಕೈಲಾಗನೀಕ್ಷಿಸು
ತಿರೆ ಕೃತಾಂತಾಲಯಕೆ ವಾಹಿನಿ
ಸರಿವುದೆಂಬಂದದಲಿ ಕೈವೀಸಿದರು ಭೂಭುಜರು
ಅರರೆ ಮೂಡಣ ಶರಧಿ ಪಡುವಣ
ಶರಧಿಗಾಂತುದೊ ರಣಚಮತ್ಕೃತಿ
ಸುರರ ನಯನಾಂಗಣಕೆ ಕವಿಸಿತು ಕೌತುಕಾಂಬುಧಿಯ ೨

ಎಲೆಲೆ ಕವಿಕವಿ ಬೆರಸುಬೆರಸಿ
ಟ್ಟಳಿಸು ತಿವಿತಿವಿ ಭಲರೆ ಭಲರತಿ
ಬಲರೆ ಹಿಂಚದಿರಿನ್ನು ಹೊಯ್ ಹೊಯ್ ಚೂಣಿಗರನೆನುತ
ಬಲಜಲಧಿ ಮುಕ್ಕುಳಿಸಿ ಮಿಗೆ ಹೆ
ಕ್ಕಳಿಸಿ ಕವಿದುದು ಗಿರಿ ಬೆಸುಗೆಯು
ಕಳಚಿತಹಿಪನ ಕೊರಳು ಕುಸಿದವು ಕಮಠನೆದೆ ಬಿರಿದ ೩

ಒದರಿ ಬಲನೊಡನೊಡನೆ ಹಳಚಿದೊ
ಡದಿರೆ ನೆಲನವ್ವಳಿಸಿ ದಿಕ್ಕರಿ
ಮದವಡಗಿದವು ಕುಣಿದು ಮೆಟ್ಟಿದರಹಿಪನೊಡಲೊಳಗೆ
ಹೊದರುದಲೆ ಹೊಕ್ಕಾಳೆ ಬೆರಳಿನ
ತುದಿಯ ತುಟಿಯಲಿ ಬೊಬ್ಬಿರಿದಡಿನ
ನದಿರೆ ದಳವುಳಿಸಿದುದು ಕೌರವಪಾಂಡವರ ಸೇನೆ ೪

ರಣದೊಳಾದುದು ಬೋನವಾರೋ
ಗಣೆಗೆ ಬಿಜಯಂಗೈವುದನುಚರ
ಗಣಸಹಿತವೆಂದತಿಬಲರು ಕಾಲಂಗೆ ದೂತರನು
ಅಣಿಯೊಳಟ್ಟಿದರೆನಲು ಪಡೆಯುರ
ವಣೆಯ ಪದಹತಧೂಳಿ ಗಗನಾಂ
ಗಣಕೆ ಕವಿದುದು ಬಳಿಕಲಬುಜಭವಾಂಡಮಂಡಲವ ೫

ಚಲನದಿಂದುದಯಿಸಿದ ಶೂದ್ರುತೆ
ಗಲಿಸಿ ಸುರಗಂಗೆಯಲಿ ಮಿಂದು
ಚ್ಚಳಿಸಿ ರಜತಾದ್ರಿಯಲಿ ಶೂಲಿಯ ಪದಯುಗವ ಭಜಿಸಿ
ಬಳಿಕ ನಾಕವನೈದಿ ಸುಮನೋ
ಲಲನೆಯುರ ಕುಂತಳಕೆ ಹಾಯ್ದುದು
ಬಲದ ಪದಹತಧೂಳಿ ಗೆಲಿದುದು ವಾಜಪೇಯಿಗಳ ೬

ಹರಿಗೆ ಕೆಂಪಿನ ಝುಗೆ ಸುರಾಂಗನೆ
ಯರಿಗೆ ಸುಭಟವ್ರಜಕೆ ಕುಂಟಣಿ
ವರ ದಿಗಂಗನೆಯರಿಗೆ ಬೈತಲೆಗೆಸೆವ ಸಿಂಧೂರ
ಸುರಪನನಿಮಿಷತನಕೆ ರಿಪುವೆನ
ಲುರವಣಿಸಿ ಕೆಂದೂಳಿ ನಭಕು
ಪ್ಪರಿಸೆ ಹೊಯ್ದಾಡಿದರುಭಯ ಚತುರಂಗಬಲ ಹಳಚಿ ೭

ಝಡಿವ ಕೈದುಗಳುರಿಯ ಕೆಚ್ಚುವ
ನಡಸಿ ಕಾರಿದವಲಗು ಖಣಿಖಟಿ
ವಿಡುವ ದನಿ ಮಿಗೆ ತುಂಬಿತಂಬುಜಬಂಧುವಾಲಯವ
ಕಡುಗಿ ಹೊಯಿದಾಡಿದರು ಡಾವಣೆ
ವಿಡಿದು ಜೋಲುವ ಕರುಳ ಹಿಣಿಲೊಳು
ತೊಡಕಿ ತೋಟಿಯ ಭಟರು ತಱುಬಿದರಂತಕನ ಪುರಿಗೆ ೮

ಬಿಡದೆ ಕಡಿದಾಡಿದರು ಸೇನಾ
ಗಡಲು ರಕುತದ ಕಡಲನುಗುಳಿತು
ಬಿಡದೆ ಸುಂಟರಗಾಳಿ ವಿಲಯದ ಮಳೆಯ ಪಡೆದಂತೆ
ಒಡೆದು ನಾನಾ ಘಟ್ಟುಗಳ ಮೈ
ವಿಡಿದು ವಾರಿಡುವರುಣಜಲದಲಿ
ಕಡಿಕುಗಳು ಬೆಂಡೇಳೆ ದಂತಿಗಳಟ್ಟೆ ಕೊಡೆನೆಗೆಯೆ ೯

ಲಗ್ಗೆ ಮಸಗಿತು ಸೂಳುವೊಯಿಲಿನ
ಬೊಗ್ಗಿನಲಿ ಮುಂಕೊಂಡು ಮೋಹರ
ವೊಗ್ಗೊಡೆದು ಹೆಣಗಿದುದು ಕೇಶಾಕೇಶಿ ಯುದ್ಧದಲಿ
ಮೊಗ್ಗರವ ಕೆದರಿದರು ಹೊಯ್ದುರೆ
ಮಗ್ಗಿದರು ಕಡಲಿಡುವ ರಕುತದ
ಸುಗ್ಗಿ ಶಾಕಿನಿಯರಿಗೆ ಸೇರಿತು ಭೂಪ ಕೇಳೆಂದ ೧೦

ತೆಗೆದುದುಬ್ಬಿದ ಧೂಳಿ ಹೆಣಸಾ
ಲುಗಳು ಹರೆದವು ರಕುತದರೆವೊನ
ಲುಗಳು ಹರಿದವು ಹೊರೆದನಂತಕನುರುಪರಿಗ್ರಹವ
ಅಗಿದು ಮಗ್ಗಿತು ಚೂಣಿ ಬಲುಕಾ
ಳೆಗವನೊಯ್ಯಾರಿಸುತ ರಾಯರು
ತೆಗೆಸಿದರು ಸೇನೆಯನು ನೂಕಿಧರಂದು ಬಿಲ್ಲವರ ೧೧

ಪುಲಿದೊಗಲ ಸೀಸಕದ ಕಿಗ್ಗ
ಟ್ಟೊಲೆವ ಸುರಗಿಯ ಕಾಂಚದೊಳರೆ
ಬಲಿದ ಬಿಲ್ಲಿಂ ಬಿಗಿದ ತಿರುವಿನ ಬೆರಳ ಕೋಲುಗಳ
ಬಲಿದ ಮುಂಗೈಹೊದೆಯ ಬಿರುದಿನೊ
ಳುಲಿವ ಘಂಟೆಯ ಬೆನ್ನಲೆವ ಬ
ತ್ತಳಿಕೆಗಳಲೈದಿತ್ತು ಬಿಲ್ಲಾಳುಭಯಸೇನೆಯಲಿ ೧೨

ಬೊಬ್ಬಿರಿದು ಪೊಳಕಾಲಸೂರಿದ
ರುಬ್ಬಟೆಯಲಿದಿರಾಂತು ಕಾಲನ
ಹೆಬ್ಬೆಳಸು ಹುಲಿಸಾಯ್ತು ಬರಹೇಳೆಂಬವೋಲೊದರಿ
ಹಬ್ಬುಗೆಯ ಜೇವೊಡೆಯ ಝಾಡಿಯ
ತೆಬ್ಬುಗಳ ತೆಗೆವೆರಳುಗೋಲಿನ
ಕೊಬ್ಬಿನಾಳೆಚ್ಚಾಡಿತಿಕ್ಕಿದ ಮಂಡಿ ಚಂಡಿಸವೆ ೧೩

ಬೆರಳ ಶರಸಂಧಾನ ದೃಷ್ಟಿಯ
ಮುರಿವ ಮುಷ್ಟಿಯ ಕುಂಡಲಿತ ಕಿವಿ
ವರೆಯ ತೆಗೆಹಿನ ತೋಳ ವೀರರು ತೂಳಿದರು ಕಣೆಯ
ಅರರೆ ಕವಿಕವಿದಂಬು ಕಡಿದವು
ಕೊರಳನುಗಿದವು ಜೋಡನೊಡಲೊಳು
ಹೊರಳಿದವು ಹೊಡೆಗೆಡಹಿದವು ಹೊಕ್ಕಿಸೆವ ಹೂಣಿಗರ ೧೪

ಕಣೆ ಕಣೆಯ ಹಳಚಿದವು ಮಾರ್ಗಣೆ
ಕಣೆಯ ಕಡಿದವು ಕವಿಯ ಕಣೆ ಕಿರು
ಗಣೆಯ ಮುಕ್ಕುಳಿಸಿದವು ಹೆಕ್ಕಳಿಸಿದವು ಹಂದೆಗರ
ಖಣಿಖಟಿಲು ನಿರಿನಿಳಿಲು ಘುರಿಘುರಿ
ಘಣಿಲು ದೊಪ್ಪನೆ ಕೊಯ್ವ ಸೀಳುವ
ಹೆಣಗೆಡಹುವಬ್ಬರಕೆ ಮಿಗಿಲೊದಗಿದರು ಬಿಲ್ಲವರು ೧೫

ಉರಗಬಲದುರವಣೆಯೊ ವಾರಿದ
ತರುಗಳುಪಶಾಖೆಗಳೊ ಕಾಲನ
ಹರವರಿಯೊ ಹೆಬ್ಬೆಳಸ ಮುತ್ತುವ ವಿಹಗಸಂತತಿಯೊ
ತರಣಿ ತಲ್ಲಣಿಸಿದನು ಹೊಗರಲ
ಗುರವಣಿಸಿ ಹೊದರೆದ್ದು ಹಿಳುಕ
ಬ್ಬರಿಸಿ ಗಬ್ಬರಿಸಿದುವು ದಿಗುತಟವನು ಶರವ್ರಾತ ೧೬

ಹೆಣಗಿ ಹಿಣಿಲಿರಿದಭ್ರದಲಿ ಸಂ
ದಣಿಸಿ ಕಣೆ ಕೈಕೊಂಡವಂಬರ
ಮಣಿಗೆ ನಡೆದುದೊ ತಿಮಿರರಾಜನ ದಂಡು ಮಂಡಳಿಸಿ
ಮಣಿಮಕುಟದಿಳೆಗೊಯ್ಲ ನೆಲದಾ
ವಣಿಯೊ ಗಗನಾರ್ಣವದ ವಾಡಬ
ಗಣವೊ ಕೌತುಕವೆನಿಸಲೆಚ್ಚಾಡಿದರು ಬಿಲ್ಲವರು ೧೭

ರೇಣು ಹತ್ತಿದ ರವಿಯ ಮಸೆಯಲು
ಸಾಣೆಗಿಕ್ಕಿತೊ ಭಗಣರತ್ನವ
ನಾಣೆಗಳೆಯಲು ಕಮಲಭವ ಸೃಜಿಸಿದ ಸಲಾಕೆಗಳೊ
ಕಾಣೆನಭ್ರವನಮಮ ದಿಕ್ಕುಗ
ಳೇಣು ಮುರಿಯಲು ಹೊಕ್ಕೆಸುವ ಬಿಲು
ಜಾಣರುರವಣೆ ಲಜ್ಜಿಸಿತು ಲೋಕದ ಧನುರ್ಧರರ ೧೮

ವೀರ ಧಣುಧಣು ಪೂತುರೇ ಬಿಲು
ಗಾರ ಮಝುರೇ ಚಾಪತಂತ್ರವಿ
ಶಾರದಾ ಎನುತೊಬ್ಬರೊಬ್ಬರ ಬಿರುದ ಮೂದಲಿಸಿ
ಓರಣದ ಕಣೆಗಳಲಿ ತಲೆಗಳ
ತೋರಣವ ಕಟ್ಟಿದರು ಸೇನಾ
ಮಾರಣಾಧ್ವರವೆಸೆದುದರುಣಜಲಾಜ್ಯಧಾರೆಯಲಿ ೧೯

ಪ್ರಳಯದಿವಸದ ಪಟುಪವನನೀ
ಹಿಳುಕುಗಾಳಿಯೊಳುದಿಸಿದುದೊ ಮಿಗೆ
ಪೊಳಗಿ ಪೋದುವ ಸಿಡಿಲ್ಗಳಂಬಿನ ಮೊನೆಯೊಳುದಿಸಿದುದೊ
ಜಲಧಿಯಲಿ ಜಂಗುಳಿಸಿ ಕುಧರಕೆ
ಕುಲಿಶಭೀತಿಯ ಬೀರಿ ಕಣೆ ಬಳಿ
ಸಲಿಸಿ ಹರಿದಾಡಿದವು ಸುಭಟರ ಗೋಣ ಗುರಿಮಾಡಿ ೨೦

ಕುಣಿದೆಸುವ ಕುಕಿಲಿರಿವ ಬಿರುದರ
ನಣಕಿಸುವ ಬಲುಬಿಲ್ಲನೊದರಿಸಿ
ಹಣುಗಿ ಕಣು ಸಟ್ವಾಲಿಗೊಳೆ ತಳಮಂಡಿ ಮುರನಾಗೆ
ಹೊಣಕಿಗರು ರಣದವಕಿಗರು ಬಿರು
ಗಣೆ ಸವೆಯಲೆಚ್ಚಾಡಿದರು ಮಿಗೆ
ಮಣಿಯದದಟರು ಸುರಗಿಗಳನುಗಿದೊಡನೆ ಹಳಚಿದರು ೨೧

ಅಹಿಯ ನಾಲಗೆ ಮೃತ್ಯುವಿನ ಹಲು
ಗುಹೆಗಳನು ಕಳೆದಂತೆ ಸಿಡಿಲಿನ
ಬಹಳ ಧೃತಿಗೆಡೆದಂತೆ ಕುಲಿಶದ ತಿರುಳ ಮಸೆದಂತೆ
ಮಹಿಯದಿರಲಿದಿರಾಂತು ಸುರಗಿಯೊ
ಳಹಮಿನದಟರು ಬಿರುದುಗೆದರು
ತ್ತಹಿತರಿರಿದಾಡಿದರು ಪಡೆದರು ರೌದ್ರರಂಜನೆಯ ೨೨

ಮಾರಿ ತಳಸಂಚದೊಳು ಮೊನೆಯನು
ತೋರಿ ತಿರುಪಿನೊಳಣೆದು ಕಳಚುವ
ರೇರುಗಾಣದೆ ಮಧ್ಯಸಂಚಕೆ ಸಿಲುಕಿ ಕೈಮಾಡಿ
ಜಾರಿ ಸುರಗಿಯೊಳಣೆವರಳುಕದೆ
ಮಾರಿದುಪ್ಪರಸಂಚದಲಿ ಕೈ
ದೋರಿ ದಂಡೆಯನೆತ್ತಿ ಕಾದಿತು ಸುರಗಿಯುತಿಬಲರು ೨೩

ಅಣೆದರೌಕುವ ಸೋಂಕಿ ತಿವಿದರೆ
ಹೆಣನ ತೋರುವ ಹಜ್ಜೆದೆಗೆದರೆ
ಜುಣಗಲೀಯದೆ ಮೇಲೆ ಕವಿಸುವ ಮಾರಿ ಕೈಮಾಡಿ
ಕೆಣಕಿದರೆ ಝುಂಕಿಸುವ ನಿಟ್ಟಿಸಿ
ಹಣುಗಿ ಮೊನೆಗೊಡೆ ದಂಡೆಯೊಳು ಖಣಿ
ಖಣಿಲು ರವವೆಸೆಯಲ್ಕೆ ಕಾದಿತು ಸುರಗಿಯುತಿಬಲರು ೨೪

ಬೀಯವಾದರು ಬಿಲ್ಲವರು ಖ
ಡ್ಗಾಯುಧರು ಕೈಕೊಳಲಿ ದಿವಿಜ
ಶ್ರೀಯು ತಪ್ಪದು ಸಮರಮುಖದಲಿ ಮಡಿದ ವೀರರಿಗೆ
ರಾಯ ಮೆಚ್ಚಲು ರಣದೊಳೊದಗುವ
ರಾಯತಿಕೆಯಂತೆಸುತ ಸೇನಾ
ನಾಯಕರು ನೂಕಿದರು ಖಂಡೆಯಕಾರ ಮೋಹರವ ೨೫

ತಾಟಿಸಿದರೊಡನೊಡನೆ ಕುಲಗಿರಿ
ದೂಟಿ ಬಿದ್ದವು ಚಿತ್ರದಲಿ ನಡೆ
ಗೋಟೆಯೆನೆ ಮಂಡಳಿಸಿ ಬಲಿದರು ತೆಕ್ಕೆವರಿಗೆಗಳ
ನೋಟದಮರರ ನಯನಗಳಿಗ
ಲ್ಲಾಟವೆನೆ ಪಯಚಕ್ರಗತಿಗಳ
ತೋಟಿಕಾರರು ಹೊಕ್ಕು ತಾಗಿದರುಭಯ ಸೇನೆಯಲಿ ೨೬

ಬಲಸಮುದ್ರದ ಬುದ್ಬುದಂಗಳೊ
ತಿಳಿಯಲರಿದೆನೆ ಹರಿಗೆ ಮುಸುಕಿತು
ಬಿಳಿಯ ಚೌರಿಗಳುಲಿವ ಘಂಟೆಯ ಬಿರುದಿನುಬ್ಬಟೆಯ
ತಲಪಟದೊಳೌಕಿದರು ತೊಡೆ ಸಂ
ಕಲೆಯ ತೊಲಗದ ಕಂಭದಪ್ರತಿ
ಬಲರು ಹಾಣಾಹಾಣಿಯಲಿ ಪೊಯಿದಾಡಿದರು ಕಡುಗಿ ೨೭

ಸಿಡಿಲ ಹೆತ್ತುದೊ ಜಡಿವ ನಿಸ್ವನ
ಕಡುಹೊಗರು ಬೆಸಲಾಯ್ತೊ ನಭವನು
ಹೊಡೆಗೊಳಿಸಲುಚ್ಚಳಿಪ ಕಿಡಿ ವಡಬಂಗೆ ಪಿತನೆನಲು
ಕುಡಿಮೊನೆಯೊಳಹಿಪತಿಯ ನಾಲಗೆ
ಗಡಣವುದಿಸಿದವೆನೆ ಕೃಪಾಣದ
ಕಡುಹು ಕೌತಕವಾಯ್ತು ಖಂಡೆಯಕಾರ ಮೋಹರದ ೨೮

ಕರೆಕರೆದು ಮೂದಲಿಸಿ ಕಡುಹಿನ
ದುರುಳರುಬ್ಬಿನ ಮೇಲೆ ಹೊಕ್ಕ
ಬ್ಬರಿಸಿ ಹೊಯಿದರು ಕಾದಿ ಕೊಂಡರು ಕಾಲನರಮನೆಯ
ಕರುಳುಗಿಯೆ ತಲೆ ಸಿಡಿಯೆ ನಿಟ್ಟೆಲು
ಮುರಿಯೆ ಮೂಳೆಗಳುದಿರೆ ಶೋಣಿತ
ಸುರಿಯೆ ಕಾಳಿಜ ಕೆದರೆ ತುಂಡಿಸಿ ಖಂಡ ಬೆಂಡೇಳೆ ೨೯

ಅಡಸಿ ಕಿಡಿಗಳ ಕಾರೆ ಲೋಹದ
ಕಡಿಕು ಸಿಡಿಲುಗ್ಗಡದಲಡ್ಡಣ
ವೊಡೆದು ಕೈಬಂದಿಗೆಯನೆತ್ತಿದಡಿಕ್ಕಲಿಸಿ ಬೀಳೆ
ಫಡ ಸುಖಾಯವ ಬಿಡದಿರಿವ್ಮೊನೆ
ಗೊಡದಿರುಪ್ಪರದಲ್ಲಿ ಕೈಯನು
ಕೊಡದಿರಾ ಮಿಡುಕದಿರು ಮುಂಡಿಯನೆನುತ ಹಳಚಿದರು ೩೦

ಕಾಲು ಖಂಡಿಸಿ ಬೀಳೆ ಕರುಳಿನ
ಮಾಲೆಯೊಳು ತೊಡಕಿದುವು ಹಣಿದದ
ಬಾಳೆಯುಂದದೊಳುಡಿಯೆ ತೊಡೆ ನಡು ಮುರಿಯೆ ಕಟಿ ಕೆದರೆ
ತೋಳ ಕೊರೆದರು ನೆಲಕೆ ತಲೆಯನು
ಬೀಳಿಕಿದರೆರಡಾಗಿ ತನುವನು
ಸೀಳುಹೊಯಿದರು ಬೈದು ತಾಗಿತು ಹರಿಗೆಯುತಿಬಲರು ೩೧

ನಿಲುಕಲಿಟ್ಟೆಡೆಯಾದ ಹೆಣನನು
ತುಳಿದು ರಣದಲಿ ಕುಣಿವ ಮುಂಡವ
ಸೆಳೆದು ರುಧಿರದೊಳೌಕಿ ಮೆಟ್ಟುವ ಮುಂದೆ ನಡೆನಡೆದು
ತಲೆಮಿದುಳ ಜೊಂಡಿನಲಿ ಜಾರುವ
ಕಲಹಕಾತರರಿಪುಭಟರನ
ಪ್ಪಳಿಸಿ ಘಾಯುಂಬಡೆದು ಮುಗ್ಗಿದರುಭಯಸೇನೆಯಲಿ ೩೨

ಉರುಳಿ ಬೀಳುವ ತಮ್ಮ ತಲೆಗಳ
ತಿರುಹಿ ರಿಪುಗಳನಿಡುವ ಸಡಿಲಿದ
ಶಿರವನರಿಯದೆ ಮುಂಡದಿದಿರಲಿ ಬೀದಿವರಿವರಿವ
ಹರಿಗೆ ಹೊಳ್ಳಿಸೆ ಖಡುಗ ಖಂಡಿಸೆ
ಕೊರಳರಿಯೆ ದೆಸೆದೆಸೆಯ ಸೇನೆಯೊ
ಳುರವಣಿಸಿ ತಿವಿದರು ಕಬಂಧದೊಳತುಳಭುಜಬಲರು ೩೩

ನೆಲಕೆ ನಿಗುರುವ ಗಂಗೆವಾಳದ
ಬಿಳಿಯ ಚೌರಿಗಳುಲಿವ ಗಂಟೆಯ
ತೊಳಪ ಬದ್ದುಗೆ ದಾರ ಕಾಂಚನಮಯದ ಗೊಂಡೆಯದ
ಉಲಿವ ಗೆಜ್ಜೆಯ ಚೆಲ್ಲಣದ ಹೊಂ
ಬಳಿದ ಹರಿಗೆಯ ಹೊಳೆವ ಕಡಿತಲೆ
ಗಳ ವಿಲಾಸದೊಳಂದು ಹೊಕ್ಕುದು ತುಳುವ ಪಡೆ ಕಡುಗಿ ೩೪

ಉರುಬಿದರೆ ವಡಬಾನಲನ ಮುಖ
ದಿರವು ಮೊನೆದೋರಿದರೆ ಭುಜಗನ
ಬಿರುಬು ಸಾಲಗೆ ಹಲಗೆಯಣೆದರೆ ಸಿಡಿಲ ಸಡಗರಣೆ
ಮೆರೆವ ಹಜ್ಜೆಯ ದಂಡೆವಲಗೆಯ
ಮರೆಯ ಕೈದಂಡೆಗಳ ಜುಣುಗಿಸಿ
ತರುಬಿ ನಿಂದರು ಸಂದ ಕಡಿತಲೆಗಾರರುಭಯದಲಿ ೩೫

ಹಳಚಿದರು ತಗರಂತೆ ಗಜದವೊ
ಲೊಲೆದು ನಿಂದರು ಹಾವಿನಂತಿರೆ
ನಿಲುಕಿದರು ಸೂಕರನವೊಲು ಕೋಡೆತ್ತಿ ಹಾಯ್ಕಿದರು
ಬಲಿದ ಚರಣಾಯುಧದವೊಲು ಪರ
ರಳವನೀಕ್ಷಿಸಿ ಕಪಿಯವೊಲು ಮೈ
ವಳಿಯ ಹತ್ತಿದರಂದು ಕಡಿತಲೆಗಾರರುಭಯದಲಿ ೩೬

ಕಡಿತಲೆಯ ಮಿಂಚುಗಳ ಹೊಯ್ಲಿನ
ಸಿಡಿಲುಗಳ ರಕ್ತಪ್ರವಾಹದ
ಕಡುವಳೆಯ ನೃತ್ಯತ್ಕಬಂಧದ ಸೋಗೆನವಿಲುಗಳ
ಬಿಡುಮಿದುಳ ಹೊರಳಿಗಳ ಹಂಸೆಯ
ನಡಹುಗಳ ನವಖಂಡದೊಳು ಹೆಣ
ನಡವಿ ತಳಿತಿರೆ ಮೆರೆದುದೈ ಸಂಗ್ರಾಮಕಾರ್ಗಾಲ ೩೭

ಪಡಿತಳವ ಬೀಸಿದರೆ ಕಾಲಿ
ಕ್ಕಡಿ ನಡುವ ತಾಗಿದರೆ ಮುಂಡಲ
ವುಡಿದು ಬಿದ್ದುದು ನಿಲುಕಿನುಪ್ಪರ ಶಿರವ ಮನ್ನಿಸದು
ಮಡವ ಮಿಾರುವ ಕಚ್ಚಿಮುಂಡಿಯ
ಪಡಿದೊಡೆಯ ತಲೆಮರೆಯ ಹರಿಗೆಯ
ಕಡಿತಲೆಯ ಕಲಿತುಳುವಪಡೆ ಹೊಯ್ದಾಡಿತಿಳೆ ಹಿಳಿಯೆ ೩೮

ಖಡುಗ ತೋಮರ ಪರಶುಗಳ ಕ
ಕ್ಕಡೆಯ ಕುಂತದ ಪಿಂಡಿವಾಳದ
ಕಡುಗಲಿಗಳುರೆ ಮುಗ್ಗಿದರು ತಗ್ಗಿದುದು ಯಮಲೋಕ
ಬಿಡದೆ ನಾಯಕವಾಡಿ ಚೂಣಿಯ
ಹಿಡಿದು ಕಾದಿತ್ತುಭಯರಾಯರು
ದಡಿಯಕೈಯವರಿಂದ ಕವಿಸಿದರಂದು ಸಬಳಿಗರ ೩೯

ಕುಣಿವ ತೊಡರಿನ ಪೆಂಡೆಯದ ಡೊಂ
ಕಣಿಯ ಬಿರುದರ ನೂಕುನೂಕೆನೆ
ಹಿಣಿಲ ಬಾವುಲಿಗಾರರಾವೆಡೆ ಭಾಷೆಯುತಿಬಳರು
ಪೊಣಿಕೆಯಿದಲೇ ಹಿಂದ ಹಾರದಿ
ರಣಿಕಿಸುವ ಮಾತಿಲ್ಲ ದಿವಿಜರ
ಗಣಿಕೆಯರು ಬಯಸುವರು ನೂಕುವದೆಂದು ಸಾರಿದರು ೪೦

ತಲೆಯ ಖಡ್ಗಣಿಗೆಯ ಸುರಂಗದ
ಪಳಿಯ ಸೀರೆಯ ಭಾಳಭೂತಿಯ
ಬಿಳಿಯ ಚೌರಿಯ ಝಗೆಯ ಸಬಳದ ಕಾಲ ತೊಡರುಗಳ
ಉಲಿವ ಬಿರುದಿನ ಕಹಳೆಗಳ ಕಳ
ಕಳಿಕೆ ಮಿಗೆ ನಿಶ್ಶಂಕಮಲ್ಲರು
ಕಳನೊಳಗೆ ತಲೆದೋರಿದರು ಡೊಂಕಣಿಯ ಪಟುಭಟರು ೪೧

ನಡೆವಡವಿಯೋ ಬಲುಭುಜರ ಪಂ
ಗಡವೊ ಸಬಳವೊ ನಭದ ಕಾಲ್ಗಳೊ
ಬಡಬವಹ್ನಿಜ್ವಾಲೆಯೋ ಸೇನಾಮಹಾಂಬುಧಿಯೊ
ಪಡೆಯ ಪದಹತಧೂಳಿ ಸವೆಯಲು
ಪೊಡವಿಪಾತಾಳದ ಫಣಿವ್ರಜ
ವಡರಿದವೊ ರವಿಬಿಂಬಕೆನಲಾದುದು ಕುತೂಹಲಿಕೆ ೪೨

ಮಿಕ್ಕು ಚೂರಿಸಲಹಿಯ ನಾಲಗೆ
ಜಕ್ಕುಲಿಸಿದಂತಾಯ್ತು ಮೊನೆಗಳ
ತೆಕ್ಕೆಯಲಿ ಕುದಿಗೊಂಡು ಸುರಿದವು ರಕ್ತಧಾರೆಗಳು
ಹೊಕ್ಕವರು ಹೆಣಗಿದರೆ ನಿರಿಗರು
ಳೊಕ್ಕವಡಗುದಿರಿದವು ಮೋಹರ
ಹಕ್ಕಲಾಗಲು ಹರಿದು ಸಬಳಿಗರಿರಿದು ತೋರಿದರು ೪೩

ನೆಲನ ಗೆಲಿದಬ್ಬರಿಸಿ ಚಾಚಿದ
ತಲೆವರಿಗೆ ತೆರಳದ ಸಂಘಾಯದ
ಬಲದ ಬೆಳೆಸಿರಿವಂತರನು ಕರೆಕರೆದು ಮೂದಲಿಸಿ
ಥಳಿಥಳಿಲು ಛಟಛಟಿಲು ಖಣಿಕಟೆ
ಲುಲುಹು ಮಿಗೆ ದನಿ ಮೆರೆಯೆ ರಿಪುಗಳ
ಗೆಲುವೆವೆಂದುರವಣಿಸಿ ಹೊಯ್ವಾಡಿದರು ರಣದೊಳಗೆ ೪೪

ಹಲಗೆ ಸೀಸಕ ಸಹಿತಲಿಖ್ಖಡಿ
ಗಳೆದರೊಡಲುಪ್ಪರದ ಘಾಯವ
ಕಳಚಿ ಕೈಮಾಡಿದರು ಕೊಂದು ಮುಂದುವರಿವರಿದು
ಹೊಳೆದು ಹೊಯ್ದರು ಮಿಂಚಿನಂತಿರೆ
ಬಲುಹು ಮಿಗೆ ಜವನಂತೆ ಬವರಿಯ
ಲುಳಿಯ ಚೌಪಟ ಮಲ್ಲರೊದಗಿದರುಭಯಸೇನೆಯಲಿ ೪೫

ಬವರಿಯಲಿ ಪೈಸರಿಸಿ ಪರಘಾ
ಯವನು ವಂಚಿಸಿ ಭಟರ ಕೊರೆದೆ
ತ್ತುವರು ಕೈಮಾಡಿದರೆ ತಿವಿವರು ಕೋಡಕೈಯವರು
ಕವಿಯಲೌಕುವರೌಕಿದರೆ ತ
ಗ್ಗುವರು ತಗ್ಗಿದರೊಡನೊಡನೆ ಜಾ
ರುವರು ಜುಣುಗುವರ್ರೈದೆ ತಿವಿದಾಡಿದರು ಸಬಳಿಗರು ೪೬

ಹೆಣನ ಹೋಳಿನ ಸಿಡಿದಡಗು ಡೊಂ
ಕಣಿಯೊಳೆಸೆದುವು ಕಾಲನಾರೋ
ಗಣೆಗೆ ಮಿಗೆ ಪಡಿಸಣವ ನೋಡದೆ ಮಾಣವೆಂಬಂತೆ
ಕುಣಿವ ಕುಂತಾಗ್ರದಲಿ ಜೋಲುವ
ಹಿಣಿಲುಗರುಳೊಪ್ಪಿದವು ಜವನೀ
ರಣಕೆ ಬರೆ ಕಟ್ಟಿದವು ಗುಡಿ ತೋರಣವನೆಂಬಂತೆ ೪೭

ದೆಸೆದೆಸೆಗೆ ಹರಿಹರಿದು ಮಾಮಸ
ಮಸಗಿ ಬಾದಣಗೊರೆದು ಕೆಡಹುವ
ವಿಷಮವೀರರು ಘಾಡಿಸಿತು ಡೊಂಕಣಿಯ ತುದಿಗಳಲಿ
ಬಸಿವ ಹೊಸ ರುಧಿರಕ್ಕೆ ಜೋಲುವ
ಕುಸುರಿಗರುಳಿಂದುದಿರುವಡಗಿನ
ಬಸೆಗೆ ಬಂದೆರಗಿದವುಲೂಕಧ್ವಾಂಕ್ಷ ಸಂದೋಹ ೪೮

ಧುರದೊಳಗೆ ಬಿಲುಗಾರರೊಗ್ಗಿನ
ಹರಿಗೆಕಾರರು ಹಲಗೆಯವರು
ಬ್ಬರದ ಡೊಂಕಣಿಕಾರರಾಂತು ಕೃತಾಂತನಾಲಯವ
ಥರಥರದಿ ತೀವಿದರು ರುಧಿರದ
ಹರಹು ಹೇರಾಳಿಸಿತು ಚೂಣಿಯೊ
ಳೆರಡು ಬಲದ ಪದಾತಿ ಸವೆದುದು ಕೇಳು ಧೃತರಾಷ್ಟ್ರ ೪೯

ಧುರವನವ ಸಾಗಿಸದಿರೇರಲಿ
ತುರಗವಾವೆಡೆ ಪಟ್ಟಸಹಣದ
ಹಿರಿಯ ಸಹಣದ ವಿಮಲಸಹಣೆಗಳವರ ಕರೆಯೆನುತ
ಧುರಧುರಂಧರರೊರಲಿದರು ಮೋ
ಹರಮಹಾಂಭೋನಿಧಿಯ ತೆರೆಯವೊ
ಲುರವಣಿಸಿದವು ಕುದುರೆ ತಾರೆಗಳುದಿರೆ ನೆಲನದಿರೆ ೫೦

ಬರಿಗಡಗ ಕೀಳ್ಕಂಬಿ ದುಕ್ಕುಡಿ
ಯುರುಗುಗಡಿಯಣ ಮೊಗವಡಂಗಳು
ತುರಗ ವದನದಲೊಪ್ಪಿರಲು ತಾ ಪಣೆಯನಳವಡಿಸಿ
ಕೊರಳ ಕೊಡಕೆಯ ಪಾರ್ಶ್ವಪೇಚಕ
ದೆರಡು ಕಡೆಯಲಿ ಸುತ್ತು ಝಲ್ಲಿಯ
ಪರಿಪರಿಯ ಹಕ್ಕರಿಕೆಯಲಿ ಬೀಸಿದರು ಚೌರಿಗಳ ೫೧

ಹಳದಿ ಪಾರಿಯ ಪಚ್ಚೆ ಜೋನೆಗ
ಪಳಿ ಸುವರ್ಣಾವಳಿಯ ಸಂಧ್ಯಾ
ವಳಿಯುದಯರಾಗದಲಿ ರಚಿಸಿದ ಹಕ್ಕರಿಕ್ಕೆಗಳ
ಕೆಲಬಲದ ಕುಣಿಕೆಗಳ ರಚಿಸಿದ
ರುಲಿವ ಘಂಟೆಯ ಮೊಗದ ಕನ್ನಡಿ
ಗಳ ವಿಲಾಸದಲಂದಲಂಕರಿಸಿದರು ತೇಜಿಗಳ ೫೨

ಸವಗ ಮೊಚ್ಚೆಯ ಬಾಹುರಕ್ಕೆಯ
ವಿವಿಧ ವಜ್ರಾಂಗಿಗಳ ಸೀಸಕ
ಕವಚಗಳ ತೊಟ್ಟತುಳಬಲರೇರಿದರು ತೇಜಿಗಳ
ಹವಣಿಸಿದ ವಾಘೆಗಳ ರಾಘೆಯ
ಸವಸರಿಯ ಭಾರಾಂಕಲವುಡಿಯ
ಗವಿಯ ಗರುವರು ನೂಕಿದರು ತೇಜಿಗಳನೋಜೆಯಲಿ ೫೩

ತರುಣಿಯರ ನೊಸಲಂತೆ ತಿಲಕದ
ಸರಿಸವದು ವೈವಾಹಗೇಹದ
ಸಿರಿಯವೊಲು ಮಂಗಳಮಯವು ಮಲೆಯಾಳ ಜನಪದದ
ಅರಸಿನಂತಿರೆ ಚೇರಮಯವೆನ
ಲುರವಣಿಸಿ ನೂಕಿದರು ನಿಡುವ
ಕ್ಕರಿಕೆಗಳ ಗುರವಾಯಿಗಳ ಘನಮದದ ತೇಜಿಗಳ ೫೪

ನಿಲುಕಿ ಹೊಳೆದವು ನೇಣ ಸಡಿಲಿಸೆ
ಕುಲಗಿರಿಯ ಹೆಡತಲೆಯನಡರಿದ
ವಳುಕಿ ಪಯಸನ್ನಿಗಳೊಳಭ್ರದ ಕುಡಿಯನಡರಿಸುತ
ದಳವುಳಿಸಿದವು ತಾಟಿಸಿದರೊಡೆ
ದುಳಿದವಖಿಳಾವನಿಯನೆನೆ ಮೈ
ಲುಳಿಯ ಮನವೇಗಾಯ್ಲು ವಾಜಿಯ ಥಟ್ಟ ನೂಕಿದರು ೫೫

ಖುರಪುಟದ ಕೆಂಧೂಳಿ ಬಂಧಿಸೆ
ತರಣಿಯನು ಪವಮಾನಮಾರ್ಗವ
ನರರೆ ಕಟ್ಟಿತು ತುಳಿದುದಿಂದ್ರನ ಸಾವಿರಾಲಿಗಳ
ಹರಿಸಬುದ ತನ್ನಗಿಲ್ಲದಿನ್ನೀ
ತರಣಿವಾಯುಸುರೇಂದ್ರರಿಗೆ ಸಂ
ಚರಿಸಲೇಕೆಂಬಂತೆ ನಡೆದವು ಘೋಟಕವ್ರಾತ ೫೬

ಖುರದ ಹೊಯಿಲಲಿ ನಡುಗಿತಿಳೆ ಫಣಿ
ವರನ ಹೆಡೆಗಳು ನೊಂದವಂಬುಧಿ
ಹೊರಳಿದವು ಹೋಗಾಡಿದವು ಕುಲಗಿರಿಗಳಚಲತೆಯು
ಅರರೆ ಸೂಟಿಯೊಳಟ್ಟಿದರೆ ದಿ
ಕ್ಕರಿಯ ಸೊಕ್ಕಡಗಿದವು ನಿಗುರುವ
ತುರಗದಳವೊಡವೆರಸಿದವು ಕುರುಪಾಂಡು ಸೈನ್ಯದಲಿ ೫೭

ಹಿಡಿಯೆ ಜವನಿಕೆ ಸಮರ ಮೋನದ
ಬಿಡುದಲೆಯ ಬಿರುದಾವಳಿಯಲು
ಗ್ಗಡಣೆಗಳ ಸೋಲಿಸುತ ತಮ್ಮನ್ವಯವ ಪಾಲಿಸುತ
ಝಡಿವ ದೂಹತ್ತಿಗಳ ಹಾಯಿಕಿ
ಹಿಡಿದ ಲೌಡಿಯ ಹತ್ತಳದ ತನಿ
ಗಡಣಿಗರು ಮೂದಲಿಸಿ ಕವಿದುದು ರಾಯರಾವುತರು ೫೮

ನೂಲ ಹರಿಗೆಯ ಹೆಗಲ ಬಾರಿಯ
ತೋಳ ತೋರಿಯ ಲೌಡಿಗಳ ಕರ
ವಾಳತಳಪದ ಮಿಂಚುಗಳ ತನುಮನದ ಕೆಚ್ಚುಗಳ
ಸಾಲದಾವಣಿದಲೆಯ ಗಂಟಲ
ಗಾಳಗತ್ತರಿಗರಗಸದ ಬಿರು
ದಾಳಿಗಳ ಛಲದಂಕರಾವುತರೊತ್ತಿ ನೂಕಿದರು ೫೯

ಹೊಡೆದು ಚಮ್ಮಟಿಗೆಯೊಳು ದೊರೆಗಳ
ಹಿಡಿವ ಸಮ್ಮುಖದಲಿ ಕಠಾರಿಯ
ನಡಸಿ ತಿವಿವ ಕೃಪಾಣದಲಿ ಕಡಿನಾಲ್ಕ ತೋರಿಸುವ
ಅಡತರದಲವನಿಪರ ಹಯಮುಂ
ಗುಡಿಯ ಮುರಿದು ವಿಘಾತಿಯಲಿ ಥ
ಟ್ಟೊಡೆದು ಹಾಯ್ವತಿಭಾಷೆಗಳ ಬಿರುದಂಕರೇರಿದರು ೬೦

ಉಲಿವ ಕೈವಾರಿಗಳ ಉಗ್ಗಿಯ
ಬಲಿವ ತಂಬಟ ಕೋಟಿಗಳ ಭುಜ
ಬಲದ ಬಿರುದರ ಹೊಯ್ಲುಗಳ ನಿಸ್ಸಾಳ ನಿಸ್ವನದ
ಘುಳುಘುಳಿಪ ಬೊಗ್ಗುಗಳ ರಿಪುಗಳ
ಮುಳಿಯಿಸುವ ಕಹಳೆಗಳ ತುರಗಾ
ವಳಿಯ ಗಜರಬ್ಬರಣೆ ಮಿಗೆ ಕೈಕೊಂಡರತಿಬಳರು ೬೧

ಹೊಡೆವ ದೂಹತ್ತಿಗಳ ಘಾಯದ
ಲೊಡೆದು ಸಿಡಿದವು ಲೋಹ ಸೀಸಕ
ವಡಸಿ ಬಲ್ಲೆಹ ಬಗಿದು ನಟ್ಟುದು ಸರಪಣಿಯ ಝಗೆಯ
ಹೊಡೆವ ಲೌಡಿಗಳೊತ್ತಿ ನೆತ್ತಿಯ
ಬಿಡು ಮಿದುಳ ಕೆದರಿದವು ರಕುತದ
ಕಡಲು ಕಡಲನು ಕೂಡೆ ಹೊಯ್ದಾಡಿದರು ರಾವುತರು ೬೨

ಜರೆದು ಸರಿಸದಲೇರಿದರೆ ಸಿಡಿ
ಲುರುಬಿದಂತಾಯಿತ್ತು ಘಾಯವ
ನರುಹಿದರೆ ದೂಹತ್ತಿ ರಾವ್ತರ ಮಸ್ತಕದೊಳಿಳಿದು
ಕೊರೆದುದಿಳೆಯನು ಹಯವ ನೂಕಿದ
ಡೊರಲಿದರು ತಳಕಮಠನೆನೆ ತ
ತ್ತರದರಿದು ಹೊಯ್ದಾಡಿದರು ಗುಜ್ಜರದ ರಾವುತರು ೬೩

ಎಡನ ಹೊಯಿದರು ಬಲದವರನಡ
ಗೆಡಹಿದರು ಸಮ್ಮುಖದ ನೃಪರನು
ಸಿಡಿಲ ಹರೆಯಂವೊಲೆರಗಿದರು ಸೂಟಿಯಲಿ ಸೈವರಿದು
ಅಡುಗುದುಳಿದರು ಮೋಹರವನೊ
ಗ್ಗೊಡೆದು ಚೂಣಿಯ ಗೋಣ ಬನದಲಿ
ಖಡುಗ ನರ್ತಿಸಲೊದಗಿದರು ಮಾಳವದ ರಾವುತರು ೬೪

ಬೀಸುನೇಣಿನ ಸೆಳೆವ ನೇಗಿಲ
ಸೂಸುಗಣೆಗಳ ಕಡಿವ ಕೊಡಲಿಯ
ಕೈಸುರಗಿ ಸೂನಗೆಯ ನಾನಾಯುಧದ ಗಡಣೆಗಳ
ಓಸರಣೆಗೊಡದತಿಬಳರು ದಿವ
ದಾಸೆಗಾರರು ವೈರಿಬಲವನು
ಘಾಸಿಮಾಡಿದರೊಗ್ಗಿನಲಿ ಹಮ್ಮೀರರಾವುತರು ೬೫

ಅರರೆ ಕವಿದರು ಕದಳಿಯನು ಮದ
ಕರಿಯ ತೊತ್ತಳದುಳಿದವೊಲು ದಿಂ
ಡುರುಳಿಚಿದರಗಕೋಟಿಯನು ಶತಮನ್ಯುವಂದದಲಿ
ಶಿರವೊಡೆಯೆ ತೊಡೆಯುಡಿಯೆ ಕೈ ಕ
ತ್ತರಿಸೆ ಕೋಳಾಹಳ ಮಹಾಸಂ
ಗರದೊಳಗೆ ಹೊಯ್ದಾಡಿದರು ಕಾಶ್ಮೀರರಾವುತರು ೬೬

ಕವಿದು ಮುಂದಲೆವಿಡಿದು ರಾವ್ತರ
ತಿವಿದು ಜೀವವ ಕಳಚಿ ಕೆಲಬಲ
ದವರ ಕೆಡೆಹೊಯ್ದುಹಿತಘಾಯವ ನೋಟದೊಡೆಹೊಯ್ದು
ಸವಗ ತುಂಡಿಸೆ ಜೋಡು ಖಂಡಿಸೆ
ನವರುಧಿರದೊರವೇಳೆ ಮಹದಾ
ಹವದೊಳೋರಂತೊದಗಿದರು ಗೌಳವದ ರಾವುತರು ೬೭

ಅಳವನರಿಯದೆ ಕೆಣಕಿತಹ ಮುಂ
ಕೊಳಿಸಿ ಕದನವ ಕೊಡ ಕೈಯವ
ರಳವಿಗೊಟ್ಟರೆ ನೋಡಿ ಸಿಡಿಮಿಡಿಗೊಂಡು ಕೆಲಸಿಡಿವ
ಗೆಲಿದರುತ್ಸಾಹಿಸುವ ಸಿಲುಕಿದ
ರಳುವ ಕೆಟ್ಟೋಡಿದರೆ ಪುರದಲಿ
ನಿಲುವ ನಿರುಪಮವೀರರೊದಗಿತು ತಿಗುಳರಾವುತರು ೬೮

ಬವರ ಸವೆಯದೆ ತೇಜಿಗಳ ಬಲು
ಜವವು ಜಾರದೆ ಬಿಡುವ ತಿವಿದರೆ
ಸವಗವುಚ್ಚಳಿಸುವವು ಕವಿದರೆ ಕಾಲಯಮನಂತೆ
ಕವಿವರವಗಡಿಸಿದರೆ ಹಿಮ್ಮೆ
ಟ್ಟುವರು ಭೂಮಾನದೊಳುಪಾಯದ
ಬವರದೋಜೆಯಲೊದಗಿದರು ಕರ್ಣಾಟರಾವುತರು ೬೯

ಉರುಬಿ ಹೊಯಿದರು ಕೈದಣಿಯೆ ಹೊ
ಕ್ಕೆರಗಿದರು ನಿಪ್ಪಸರದಲಿ ಮು
ಕ್ಕುರಿಕಿದರು ತಲೆಮಿದುಳ ಜೊಂಡಿನ ಜುರಿತ ಜೋಡುಗಳ
ತರಿದು ಬಿಸುಟರು ಖಗನಿಕರಕಾ
ರ್ದಿರಿದು ಕಾಲನ ಬನಕೆ ರಕುತದ
ಕೆರೆಯ ತೂಬೆತ್ತಿದರು ಸೇವಣ ರಾಯ ರಾವುತರು ೭೦

ರಾವುತೋ ಮಝು ಭಾಪು ರಾವುತು
ದೇವು ರಾವುತು ಭಲರೆ ರಾವುತು
ರಾವುತೋ ನಿಶ್ಶಂಕರಾವುತು ರಾವುತೆಂದೆನುತ
ರಾವು ರಾವುತು ಪೂತುರಾವುತು
ಭಾಪು ರಾವುತು ರಾವುತೋ ಎಂ
ದೋವಿ ಹೊಯಿದಾಡಿದರು ರಣದಲಿ ಲಾಳ ರಾವುತರು ೭೧

ಗಾಳ ಕೊಂಕ ಕಳಿಂಗ ವರ ನೇ
ಪಾಳಕದ ರಾವುತರು ರಣಭೇ
ತಾಳರಣಲೊಳಗಡಗಿದರು ಕುರುಪಾಂಡು ಸೈನ್ಯದೊಳು
ಹೇಳಲಳವಲ್ಲುಭಯದಲಿ ಹೇ
ರಾಳ ಕಾಳೆಗ ಹಿರಿದು ಕಿರಿದೆನೆ
ಹೇಳುವೆನು ಬವರಕ್ಕೆ ಬಂದುದು ಮತ್ತಗಜಸೇನೆ ೭೨

ಕನಕಗಿರಿಯಲಿ ವಿಂಧ್ಯಗಿರಿಯಂ
ಜನಗಿರಿಯ ಮಲಯಾದ್ರಿಯಲಿ ಸಂ
ಜನಿಸಿದಾನೆಯ ಸೇನೆಯಲಿ ಬೀಸಿದರು ಚೌರಿಗಳ
ಕನಕಘಂಟೆಗಳುಲಿಯೆ ಹೊರಜೆಯ
ತನತನಗೆ ಹಿಡಿದಡರಿ ಪೂರ್ವಾ
ಸನವ ವೆಂಠಣಿಸಿದರು ರಾಜಾರೋಹಕವ್ರಾತ ೭೩

ಬಾರ ಸಂಕಲೆ ಪಕ್ಕ ಘಂಟೆಯ
ಚಾರು ಚಮರದ ಕೊಡತಿಗಳ ಕೈ
ಹಾರೆ ಕೂರಂಕುಶದ ಬಿರುದರು ಹೊದ್ದಿದರು ಗಜವ
ಬಾರ ದೂಹತ್ತಿಗಳ ಗುಂಡನು
ತೋರ ಲೌಡಿಯ ತೊಟ್ಟು ಕೈಯಲಿ
ವಾರಣದ ದೋಹರವ ನೂಕಿದರುಭಯಸೇನೆಯಲಿ ೭೪

ಕಾಲನುಬ್ಬೆಗೆ ಶೀತಳಂಗೊಡು
ವಾಲವಟ್ಟವೊ ವಿಲಯಕಾಲದ
ಗಾಳಿಯೋ ಮೇಣ್ ಕರ್ಣತಾಳವೊ ಕಿವಿಗೆ ಕೌತುಕವೊ
ಕಾಲುವೆರಸಿದ ನೀಲಗಿರಿಗಳ
ಧಾಳಿಯೋ ಮೇಣಂಜನಾದ್ರಿಯ
ಬೀಳಲೋ ಬರಿಕೈಗಳೋ ನಾವರಿಯೆವಿದನೆಂದ ೭೫

ಪಡೆಯೊ ಹೀನೇಂದುವಿನಿರುಳ ಮುಂ
ಗುಡಿಯೊ ಮುಗಿಲೋ ಮದದ ತುಂಬಿಯೊ
ಬಿಡುಮದದ ವಾರಿಗಳೊ ಹೊಸ ವಾರಾಶಿಯೋ ಮೇಣು
ಅಡಸಿ ಪದಹತಧೂಳಿ ಮದವನು
ಕುಡಿದುದಾ ಮದಧಾರೆ ರೇಣುವ
ನಪಗಿಸಲು ಮದಧೂಳಿಗಳು ಹೆಣಗಿದುವು ತಮ್ಮೊಳಗೆ ೭೬

ಕುಲಗಿರಿಗಳಗ್ರದೊಳು ಕೈಗಳ
ನಿಳುಹಿದನೊ ರವಿಯೆನಲು ಮಿಗೆ ಹೊಳೆ
ಹೊಳೆವ ಕೂರಂಕುಶವನಿಕ್ಕಿದರಿಭದ ಮಸ್ತಕಕೆ
ಉಲಿದವಿದಿರೊಳು ಡೌಡೆ ಬಿರುದಾ
ವಳಿಯ ಕಹಳೆಗಳೂದಿದವು ನೆಲ
ವೊಳಗಿದಂತಿರಲೊದರಿದವು ನಿಸ್ಸಾಳಕೋಟಿಗಳು ೭೭

ಹೊಕ್ಕವಾನೆಗಳೆರಡು ಸೇನೆಯೊ
ಳೊಕ್ಕಲಿಕ್ಕಿದವೆಸುವ ಜೋದರ
ತೆಕ್ಕೆಗೋಲಿನ ಮಾಲೆ ಮುಕ್ಕುಳಿಸಿದವು ದಿಗುತಟವ
ಉಕ್ಕಿನುರುಳಿಯೊಳಿಡುವ ಖಂಡೆಯ
ದಿಕ್ಕಡಿಯ ಘಾಯಗಳ ಪಟ್ಟೆಯ
ದಕ್ಕಜದ ಹೊಯಿಲೆಸೆಯೆ ಕಾದಿದವಾನೆಯಾನೆಯೊಳು ೭೮

ತಿವಿಯೆ ಕಳಚುವ ಕಳಚಲೊತ್ತುವ
ಕವಿದಡಾನುವ ನಿಂದಡೆತ್ತುವ
ಸವೆಯೆ ತುಡುಕುವ ತುಡುಕಿ ಮಿಗೆ ಕೈಕೈಯ ಜೋಡಿಸುವ
ಭುವನ ಭಯಗೊಳಲೊದರುತುರವಣಿ
ಸುವ ವಿಘಾತಿಸಿ ತುಳಿವ ಸೀಳುವ
ನವಮದೇಭದ ಸಮರ ಸೋಲಿಸಿತಮರರಾಲಿಗಳ ೭೯

ತಿರುಹಿ ಬಿಸುಟುವು ಕಾಲುಗಾಹಿನ
ತುರಗವನು ಮುಂಬಾರೆಕಾರರ
ಶಿರವನ್ನೆದಾರೇಳನಡಸಿದವಣಲ ಹೊಳಲಿನೊಳು
ಅರರೆ ಪಟ್ಟೆಯ ಲೌಡಿ ಖಂಡೆಯ
ದುರವಣೆಯ ಹೊಯಿಲಿನೊಳು ರಿಪುಗಜ
ವುರುಳಿದವು ತೆರಳಿದವು ಜೋದರ ಜೀವವಂಬರಕೆ ೮೦

ಮೆಟ್ಟಿ ಸೀಳಿದು ಹಾಯ್ಕಿ ದಾಡೆಯ
ಕೊಟ್ಟು ಮೋರೆಯನೊಲೆದು ಹರಿದರೆ
ಯಟ್ಟಿ ಹಿಡಿದಪ್ಪಳಿಸಿ ಜೋದರನಂಘ್ರಿಯಿಂದರೆದು
ಇಟ್ಟು ಕೆಡಹಲು ಹೆಣನ ಲೊಟ್ಟಾ
ಲೊಟ್ಟೆ ಮಸಗಿತು ತುರಗ ನರ ರಥ
ವಿಟ್ಟಣಿಸೆ ಸವರಿದವು ದಂತಿವ್ರಾತವುಭಯದೊಳು ೮೧

ಕುತ್ತಿ ಹಿಂಗುವ ಭಟರ ದಾಡೆಯೊ
ಳೊತ್ತಿ ನೆಗಹಿದಡೊಗುವ ರಕುತಕೆ
ಮುತ್ತಿ ಬಾಯ್ಗಳನೊಡ್ಡಿ ಕುಡಿದುದು ಶಾಕಿನೀನಿವಹ
ಮಿತ್ತುವಿನ ಗಣವಿಭದ ದಾಡೆಯ
ಸುತ್ತಿ ಜೋಲುವ ಕರುಳ ಹಿಣಿಲನು
ಕುತ್ತಿದವು ತಮ್ಮೊಳಗೆ ಹೆಣಗಿದವಸಮಸಮರದಲಿ ೮೨

ಅರರೆ ಮತ್ಯುವಿನರಕೆಗೌಷಧ
ವರೆವವೊಲು ರಿಪುಬಲವನಸಿಯಿ
ಟ್ಟರೆದವಿಭ ಬರಿಕೈಯ ಭಾರಿಯ ಲಾಳವುಂಡಿಗೆಯ
ಸರಿಸಗುಂಡಿನೊಳೊಂದನೊಂದಿ
ಟ್ಟೊರಸಿದವು ಕೊಡಹಿದವು ಸೀಳಿದು
ಹೊರಳಿಚಿದವೆರಗಿದವು ನಾನಾ ವಿಧದ ಕೊಲೆಗಳಲಿ ೮೩

ವ್ರಣದ ಬಂಧದ ಜಗಿಯ ದಾಡೆಗೆ
ಕುಣಿದು ಕವಿವ ವಿಹಂಗ ತತಿಗಳಿ
ನಣಲೊಳಡಸಿದ ತಲೆಗೆ ಕೈಗುತ್ತುವ ನಿಶಾಟರಲಿ
ಹೆಣನ ಬೀಸುವ ಕೈಗಳಲಿ ಸಂ
ದಣಿಸುವಸುರರಿನುರು ಕಪಾಲವ
ಕೆಣಕುವಳಿಯಿಂ ಚಂಡಿಯಾದುವು ಸೊಕ್ಕಿದಾನೆಗಳು ೮೪

ಅಡಸಿ ತಲೆಗಳ ಕಿತ್ತು ಸೇನೆಯ
ನಿಡುವ ಬಸುರನು ಬಗಿದು ಕರುಳನು
ಕೊಡಹಿ ಸೂಸುವ ಮಿದುಳ ಮೊಗೆದೆಣ್ದೆಸೆಗೆ ಸಾಲಿಡುವ
ಅಡಗನಾಯಿದು ಕೆದರಿ ರಕುತವ
ತುಡುಕಿ ಚೆಲ್ಲುವ ಕಿರಿಯ ಬರಿಕೈ
ಬಿಡಿಸಿದವು ಹುಟ್ಟಾಗಿ ಯಮರಾಜನ ಪರಿಗ್ರಹಕೆ ೮೫

ಕಾಲುಗಳಲೊಡೆತುಳಿವ ಮೋರೆಯ
ತೋಳಿನೊಳು ಬೀಸಿಡುವ ರದನದಿ
ಹೋಳಿಸುವ ಖಾತಿಯಲಿ ನಾನಾ ವಿಧದ ಕೊಲೆಗಳಲಿ
ಕಾಲನೊಗಡಿಸೆ ಕೊಲುವ ಮದಗಜ
ಜಾಲಗಳೊಳಾರೋಹಕರು ಕೆಂ
ಗೋಲ ಮಳೆಗರೆದಾರಿದರು ನೃಪಸೇನೆಯೆರಡರಲಿ ೮೬

ನೀಲಗಿರಿಗಳ ನೆಮ್ಮಿ ಘನ ಮೇ
ಘಾಳಿ ಸುರಿದವೊ ಮಳೆಯನೆನೆ ಬಿರು
ಗೋಲ ಸೈವಳೆಗರೆದರುಭಯದ ಜೋದರವಗಡಿಸಿ
ಮೇಲೆ ತೊಳಲುವ ಖಚರ ನಿಚಯುಗ
ಳಾಲಿಯೊಲೆದವು ಧರೆಗೆ ಗಗನಕೆ
ಕಾಳಿಕೆಯ ಪಸರಿಸಿತು ಜೋದರ ಕೋದ ಶರಜಾಲ ೮೭

ಎಲೆಲೆ ವಿಂಧ್ಯಾಚಲದ ಹರಿಬಕೆ
ಕಳನ ಹೊಕ್ಕವೊ ಕಣೆಗಳೆನುತಾ
ನಳಿನಸಖನಂಜಿದನು ಕೋಪಾಟೋಪಕಭ್ರದಲಿ
ಅಲಗುಗಣೆಗಳೊ ಮೇಘತರುವಿನ
ತಳಿತ ತುದಿಗೊಂಬುಗಳೊ ಬೀಳುವ
ತಲೆಗಳೋ ತತ್ಫಲಸಮೂಹವೊ ಚಿತ್ರವಾಯ್ತೆಂದ ೮೮

ಸರಳ ಸರಳೊಳು ಕಡಿವ ಕರಿಗಳ
ಕೊರಳ ಮುರಿಯೆಸುವೋರಣದ ಮೊಗ
ವರಿಗೆಗಳ ಖಂಡಿಸುವ ಮೋರೆಯ ಕರವ ತುಂಡಿಸುವ
ಸರಳು ವದನವ ತಾಗಿ ಪೇಚಕ
ಕುರವಣಿಸೆ ತೆಗೆದೆಸುವ ಜೋದರ
ಧುರಚಮತ್ಕೃತಿ ಬೆರಗನಿತ್ತುದು ದೇವಸಂತತಿಗೆ ೮೯

ಶೂರ ಜೋದರ ಮೇಲುವಾಯಿದು
ವೀರಸಿರಿ ಬಿಗಿಯಪ್ಪೆ ಮುತ್ತಿನ
ಹಾರ ಹರಿಯಲು ಕೆದರಿದವು ದೆಸೆದೆಸೆಗೆ ಮುತ್ತುಗಳು
ವಾರಣದ ಕುಂಭಸ್ಥಳಂಗಳ
ಚಾರುಮೌಕ್ತಿಕನಿಕರವೋ ಮೇಣ್
ಭಾರತಾಹವ ಕೌತುಕೋದಯರಸಕೆ ನೆಲೆಯಾಯ್ತೊ ೯೦

ಅರರೆ ಶರಸಾಗರದ ಜೋದರ
ಸರಳಹತಿಯಲಿ ಮಂದರಾಚಲ
ಕರಿಯ ಮಸ್ತಕವೊಡೆದು ಕೆದರಿತು ಮೌಕ್ತಿಕವ್ರಾತ
ಹರೆದು ತಾರಗೆಯಾದವಭ್ರದೊ
ಳುರುಳೆ ರತ್ನಾಕರನೆನಿಪ್ಪಾ
ಬಿರುದು ಸಂದುದು ಶರನಿಧಿಗೆ ಭೂಪಾಲ ಕೇಳೆಂದ ೯೧

ಧುರದ ಜಯಸಿರಿ ವೀರಭಟರಿಗೆ
ಸುರಿವ ಲಾಜಾವರುಷದಂತಿರೆ
ಸುರಿದ ಮುತ್ತುಗಳೆಸೆದವಭ್ರವಿಮಾನ ಭಾಗದಲಿ
ಕರಿಶಿರದ ಮುಕ್ತಾಳಿಯೊಪ್ಪಿದ
ವರ ವಿಜಯರೊಡಗೂಡಿ ಜಯವಧು
ವಿರದೆ ಪುಳಕಿತೆಯಾದಳೆನೆ ಚೆಲುವಾಯ್ತು ನಿಮಿಷದಲಿ ೯೨

ವಿಗ್ರಹದೊಳಿದಿರಾಂತ ಕರಿಗಳ
ವಿಗ್ರಹಂಗಳು ಕೆಡೆಯೆ ಕಾದಿ ಸ
ಮಗ್ರಬಲ ಜೋದಾಳಿ ಕೊಂಡುದು ಸುರರ ಕೋಟೆಗಳ
ಉಗ್ರದಾಹವಭೂತಗಣಕೆ ಸ
ಮಗ್ರ ಭೋಜನವಾಯ್ತು ಸಂಗರ
ದಗ್ರಿಯರು ಕೈವೀಸಿದರು ತೇರುಗಳ ತಿಂತಿಣಿಯ ೯೩

ನೊಗನ ಬಿಗುಹಿನ ಕಂಧುದುರು ವಾ
ಜಿಗಳು ಕುಣಿದವು ಪಲ್ಲವದ ಸೆರ
ಗಗಿಯೆ ಟೆಕ್ಕೆಯವೆತ್ತಿದವು ಮುಮ್ಮೊನೆಯ ಸೂನಗೆಯ
ಹೊಗರುಗಳ ತೀಡಿದರು ಕೀಲ
ಚ್ಚುಗಳ ಮೇಳೈಸಿದರು ಬಲು ನಂ
ಬುಗೆಯ ಬದ್ಧರದೊಳಗೆ ತುಂಬಿದರಸ್ತ್ರ ಶಸ್ತ್ರಗಳ ೯೪

ಹಯನಿಕರ ಖುರಕಡಿಯ ವಜ್ರಾಂ
ಗಿಯನು ಹೊತ್ತುವು ಝುಡಿವ ಹೊಂ ಗಂ
ಟೆಯ ವಿಡಾಯ ವರೂಥವನು ಕರೆಸಿದವು ಚೀತ್ಕೃತಿಯ
ಜಯನಿನದವಳ್ಳಿರಿಯೆ ಸೂತಾ
ಶ್ರಯದಲತಿರಥನಿಕರ ರಥ ಸಂ
ಚಯುವ ವೆಂಠಣಿಸಿದರು ತುಳುಕಿದರತುಳ ತೋಮರವ ೯೫

ಪೂತು ಸಾರಥಿ ಭಾಪು ಮಝುರೇ
ಸೂತ ಧಿರುಧಿರು ಎನುತ ರಥಿಕ
ವ್ರಾತ ಮಿಗೆ ಬೋಳೈಸಿ ಕೊಂಡರು ಹಯದ ವಾಘೆಗಳ
ಆ ತುರಂಗದ ಖುರಪುಟದ ನವ
ಶಾತಕುಂಭದ ಗಾಲಿಯುರುಬೆಯ
ನಾ ತತುಕ್ಷಣವಾಂಪರಾರೆನೆ ಕವಿದುದುಭಯದೊಳು ೯೬

ಹರಿವ ರಥದುರವಣೆಗೆ ನೆರೆಯದು
ಧರಣಿಯೆಂದಂಭೋಜಭವನೀ
ಧರೆಯನಿಮ್ಮಡಿಸಿದನೊ ಎನಲಾ ಬಹಳ ಸಮರದೊಳು
ಹರಿವ ರಥಪದಧೂಳಿ ಮಕರಾ
ಕರವ ಕುಡಿದುದು ಚೀತ್ಕೃತಿಯ ಚ
ಪ್ಪರಣೆ ಮಿಗಲುರುಬಿದರು ರಥಿಕರು ಸರಿಸ ವಾಘೆಯಲಿ ೯೭

ಘನರಥದ ಚೀತ್ಕಾರ ಗಜರುವ
ಧನುವಿನಬ್ಬರ ಹಯದ ಹೇಷಾ
ನಿನದ ರಥಿಕರ ಬೊಬ್ಬೆ ಸೂತರ ಬಹಳ ಚಪ್ಪರಣೆ
ಅನುವರದೊಳೊದಗಿತ್ತು ವಿಲಯದ
ವಿನುತ ಮೇಘಧ್ವಾನವನು ಸಂ
ಜನಿಸಿತೆನೆ ಹಳಚಿದವು ರಥರಥವೆರಡು ಸೇನೆಯಲಿ ೯೮

ತೆಗೆತೆಗೆದು ತಲೆಮಟ್ಟು ಕರೆದರು
ಬಿಗಿದ ಬಿಲುಗಳಲತಿರಥರು ಕಂ
ಬುಗೆಯ ಮುರಿದರು ಹಯವ ತರಿದರು ಸಾರಥಿಯ ಕೆಡಹಿ
ಹಗಲ ಹೊಳಿದರವಮ ಬಾಣಾ
ಳಿಗಳಲಸಮ ಮಹಾರಥರು ಕಾ
ಳೆಗದೊಳಹುದೆನಿಸಿದರು ರಣದೊಳು ಸುಳಿವ ಯಮನವರ ೯೯

ತಿರುಗೆ ತಿರುಗಿದರೆಚ್ಚ ರೆಚ್ಚರು
ಮರಳೆ ಮರಳಿದರೌಕಲೌಕಿದ
ರುರವಣಿಸಲುರವಣಿಸಿದರು ಮಾರ್ತಾಗೆ ತಾಗಿದರು
ಸರಳಿಗಂಬನು ಸೂತ ವಾಜಿಯ
ಶಿರಕೆ ಶಿರವನು ರಥಕೆ ರಥವನು
ಸರಿಗಡಿದು ಕಾದಿದರು ಸಮರಥರಾಹವಾಗ್ರದಲಿ ೧೦೦

ರಥವದೊಂದೆಸೆ ಹಯವದೊಂದೆಸೆ
ರಥಿಕರೊಂದೆಸೆ ಚಾಪ ಶರ ಸಾ
ರಥಿಗಳೊಂದೆಸೆಯಾಗೆ ಕೊಂದರು ಬಲದೊಳತಿರಥರು
ರಥಿಕರುರವಣೆಯುಭಯ ಬಲದಲಿ
ಕಥೆಯ ಕಡೆಯಾಯಿತ್ತು ಬಳಿಕತಿ
ರಥರು ಹೊಕ್ಕರು ಕೇಳು ಧೃತರಾಷ್ಟ್ರಾವನೀಪಾಲ ೧೦೧

ಐದನೆಯ ಸಂಧಿ

ಸೂ. ಉಭಯಬಲದತಿರಥ ಮಹಾರಥ
ವಿಭುಗಳುರೆ ಹಳಚಿದರು ರಣದಲಿ
ತ್ರಿಭುವನವು ರಂಜಿಸಿತು ಸವೆದುದು ಸಕಲ ಸನ್ನಾಹ

ಅಳಿದುದೆರಡರ ಚೂಣಿ ಮುಂಗುಡಿ
ಯೊಳಗೆ ಕಡಲಾಯ್ತರುಣ ಜಲದೊ
ಬ್ಬುಳಿಯ ಖಂಡದ ದೊಂಡೆಗಳು ಕೆಸರಿಡುವ ಮಿದುಳುಗಳ
ಕಳದ ಹೆಣನೊಟ್ಟಿಲಲಿ ಮೊಗಸುವೊ
ಡಳುಕಿದರು ಮನ್ನೆಯರು ಬಳಿಕರೆ
ನೆಲೆಗಳಲಿ ಸೂಳೈಸಿದವು ನಿಸ್ಸಾಳ ಕೋಟಿಗಳು ೧

ನರನ ರಥ ಕುಣಿದುದು ಯುಧಿಷ್ಠಿರ
ನುರು ವರೂಥ ಸಗಾಢದೊಳು ಚೀ
ತ್ಕರಿಸಿತನಿಲಾತ್ಮಜನ ಸ್ಯಂದನ ಮುಂದುವರಿಯುತಿರೆ
ಭರದಿ ಮಾದ್ರೀಸುತರ ತೇರುಗ
ಳುರವಣಿಸಲಭಿಮನ್ಯು ಸಾತ್ಯಕಿ
ಯಿರದೆ ಕೈಕೊಳಲಾಯಿತಿತ್ತಲು ಕದನಕುದ್ಯೋಗ ೨

ವಿನುತ ಭೀಷ್ಮನು ಗಜರೆ ದುರಿಯೋ
ಧನನು ಬಿಲುಗೊಳಲಾತನನುಜರು
ಧನುವ ತುಡುಕೆ ಸುಶರ್ಮ ಶಲ್ಯರು ಸರಳ ಹೊದೆಗೆದರೆ
ಮೊನೆಗಣೆಯನಳವಡಿಸೆ ಗುರು ಗುರು
ತನುಜನಸ್ತ್ರವ ತಿರುಹೆ ಸೇನಾ
ವನಧಿ ಗರ್ಜಿಸಲಾಯ್ತು ಸಂಕುಲಸಮರ ಸೌರಂಭ ೩

ಶಕುನಿ ಸಹದೇವನೊಳು ಶಲ್ಯನು
ನಕುಲನೊಳು ದುಶ್ಶಾಸನನು ಸಾ
ತ್ಯಕಿಯೊಡನೆ ಸೈಂಧವನು ಕುಂತೀಭೋಜ ಭೂಪನೊಳು
ಸಕಲ ನಾಯಕರಂದು ಯುದ್ಧೋ
ದ್ಯುಕುತರಾದರು ಕೇಳು ನೃಪ ತಾ
ವಕರ ಕೌಂತೇಯರ ಸಮಗ್ರಾಹವದ ವಿಸ್ತರವ ೪

ಕಣೆಗೆದರಿ ದ್ರುಪದಾಂಕ ಗುರುವನು
ಕೆಣಕಿದನು ತತ್ತನುಜ ಭೀಷ್ಮನ
ಸೆಣಸಿದನು ಮೂದಲಿಸಿದನು ಲಕ್ಷಣನನಭಿಮನ್ಯು
ರಣಕೆ ಕರೆದನು ಕೌರವಾನುಜ
ಗಣವನನಿಲತನೂಜನಿತ್ತಲು
ಹೆಣಗಿದರು ಭಗದತ್ತ ಭೀಮಕುಮಾರರವಗಡಿಸಿ ೫

ಕಲಹದೊಳು ಕರಿಘಟೆಯ ಹೊಯ್ ಹೊ
ಯ್ದಲಸಿ ಕೌರವನನುಜನನು ಮುಂ
ಕೊಳಿಸಿ ಕೊಳ್ಳದೆ ಕಳುಹಿ ಬೇಸರುತನಿಲಸುತ ಮಸಗಿ
ನೆಲನ ಲೋಭಿಯ ಬುದ್ಧಿ ಮರಣಕೆ
ಫಲಿಸಬೇಹುದು ಕರೆ ಸುಯೋಧನ
ನಿಲಲಿ ಬವರಕ್ಕೆನುತ ಗದೆಯನು ತೂಗಿದನು ಭೀಮ ೬

ಭುಜವನೊದರಿಸಿ ಸಿಂಹರವದಲಿ
ಗಜರಿ ಗದೆಯನು ತಿರುಹಿ ರಿಪು ಭೂ
ಭುಜರನರಸಿದನಳವಿಗಾಂತರೆ ಕೊಂದನತಿಬಳರ
ತ್ರಿಜಗ ಮಝು ಭಾಪೆನಲು ಪವಮಾ
ನಜನು ತಿರುಗಿಟ್ಟಣಿಸೆ ಸೇನಾಂ
ಬುಜಕೆ ಕುಂಜರನಾದೆದನ್ನೈ ಜನಮೇಜಯ ಕ್ಷಿತಿಪ ೭

ನಡೆದರಾಹವಕನಿಲ ನಂದನ
ನೊಡನೆ ಸಾತ್ಯಕಿ ನಕುಲ ದ್ರುಪದರು
ತುಡುಕಿದರು ಬಿಲುಗೋಲನೈದಿತು ಪವನಜನ ಚೂಣಿ
ಗಡಣಿಸುವ ಮುಂಮೊಗದ ಕೌರವ
ಪಡೆಯ ಹೇರಡವಿಯನು ಸವರಲು
ಕಡಿತಕಾರರು ಮುಂದೆ ಹೊಕ್ಕುದು ನಕುಲ ಪಾರ್ಥಜರು ೮

ಕಡಿದರರಿಭಟಪಾದಪವನಡ
ಗೆಡಹಿದರು ಗಜಗಿರಿಗಳನು ರಥ
ದೆಡೆದೆವರ ಕೊಚ್ಚಿದರು ತುರಗವ್ರಜದ ಬಲುಮೆಳೆಯ
ಕಡಿದು ಪರಹಿದರನಿಲಸುತ ಕಾ
ಲಿಡಲು ತೆರಹಾಯ್ತುಹಿತವಿಪಿನದ
ಕಡಿತ ತೀರಿತು ಹೊಕ್ಕನರೆನೆಲೆಗಾಗಿ ಕಲಿಭೀಮ ೯

ಎಲೆಲೆ ವಿಲಯಕೃತಾಂತನೋ ನ
ಮ್ಮಳವು ಕೊಳ್ಳದು ಬೆಂಗೊಡಲಿ ಮುಂ
ಕೊಳಿಸದಿರಿ ಮದುಳಾಗದಿರಿ ಹರುಳಾಗಿ ಹೆಂಡಿರಿಗೆ
ಕೊಲೆಗಡಿಗನೋ ಭೀಮನೋ ರಿಪು
ಬಲಜಲಧಿಬಡಬಾನಲನೊ ತೊಲ
ತೊಲಗೆನುತ ತೆಗೆದೋಡಿತರೆನೆಲೆ ಕೌರವನ ಹೊರೆಗೆ ೧೦

ಅದಟನಡ್ಡೈಸಿದನು ದುರುಳನ
ಮದವನಳಿವೆನು ಬಾಯ ಹೊಯ್ ಹೊಯ್
ಕದನದಲಿ ನಡುಗಿಸುವ ನಾಯಕವಾಡಿಗಳನೆನುತ
ಬದಗಿನಿದಿರಾದನು ಜಯಶ್ರೀ
ಮದನಕಾಯನು ಕಪಟದಾಯನು
ವಿದಿತಮಾಯನು ರಣದಜೇಯನು ಕೌರವರ ರಾಯ ೧೧

ಎಲವೊ ಮಾರುತಿ ನಿಮ್ಮೊಳಗೆ ಕೋ
ಮಳೆಯ ಹಂದುವನು ಮೆಚ್ಚಿ ನಮ್ಮೊಳ
ಗಿಳೆಯ ಹಂದುವನು ಬಯಸಿದೈ ಛಲದಂಕನೆಂದರಿಯ
ನೆಲನ ಬೇಟವ ಬಿಸುಟು ಜೀವದ
ಲುಳಿದು ತೊಲಗೆನೆ ಪವನಸುತ ಕಳ
ಕಳಸಿ ನಗುತವೆ ಕೌರವೇಂದ್ರಂಗೆಂದನುತ್ತರವ ೧೨

ಕೆಡಹಿ ದುಶ್ಶಾಸನನ ರಕುತವ
ಕುಡಿದು ನಿನ್ನೂರುಗಳನೀಕ್ಷಣ
ವುಡಿದು ಕೊಂಬೆನು ಧರೆಯನಲ್ಲದೆ ಹುದುವ ಬಯಸುವೆನೆ
ಪೊಡವಿ ದ್ರುಪದಕುಮಾರಿಯೆಮ್ಮಯ
ಮಡದಿಗನ್ಯರು ಮನವಿಡಲು ಬಳಿ
ಕಡಗುದರಿವೆನೆನುತ್ತ ಹೊಕ್ಕನು ಭೀಮನವಗಡಿಸಿ ೧೩

ಗಾಳಿಯುರುಬೆಗೆ ಮಲೆತ ಮೇಘದ
ತೋಳುವಲ ನಗೆಗೆಡೆಯಲಾ ಕುರು
ಪಾಲನೆತ್ತಲು ಭೀಮನೆತ್ತಲು ಶಿವಶಿವಾ ಎನುತ
ಮೇಲಣಮರರ ಮಂದಿ ನಗೆ ನೃಪ
ಮೌಳಿ ಜವಗೆಡೆ ಖಾತಿಯೊಳು ಕ
ಟ್ಟಾಳು ಹೊಕ್ಕುದು ಭೀಮಸೇನನ ರಥವ ಮುರಿಯೆಸುತ ೧೪

ಬಿಲುದುಡುಕಿ ಕೈಕೊಂಡ ರಥಿಕಾ
ವಳಿಯು ಗೋಣಾಡವಿಯಲಿ ಭೀಮಾ
ನಲನ ವಿಲಸತ್ಕೇಳಿ ಕಾಣಿಸಲಾಯ್ತು ನಿಮಿಷದಲಿ
ಇಳೆಯೊಳೀ ಪವಮಾನ ನಂದನ
ನುಳಿಯೆ ಯಮರಾಜಂಗೆ ಬೆಸಕೈ
ವಳವಿ ಹಲಬರಿಗಾಗದೆಂದುದು ಸಮರ ಭೂತಗಣ ೧೫

ಪವನಜನ ಕೈಘಾಸಿಗಾನದ
ಬವರಿಗರನೀಕ್ಷಿಸುತ ರಥವನು
ಕವಿಸಿದನು ಕೈನೆಗಹಿ ಮೋಹರಕಭಯವನು ಕೊಡುತ
ಹವಣಿಸೈ ಹೇರಾಳದಾಟೋ
ಪವನು ಹಾರೈ ಜಯದ ರಣದಲಿ
ತವಕಿಸೈ ತೆಗೆದೋಟಕೆನುತುರವಣಿಸಿದನು ಭೀಷ್ಮ ೧೬

ಎಲೆ ಪಿತಾಮಹ ನೀವು ಕರುಣಿಸಿ
ದಳವ ನಿಮಗೊಪ್ಪಿಸುವೆ ಜಯವೆಮ
ಗುಳಿವು ಬೇರೆಂತೆನುತ ಕೊಂಡನು ಪವನಸುತ ಧನುವ
ಚಳಕದಲಿ ತೆಗೆದೆಚ್ಚಡಹಿತನ
ಹಿಳುಕ ಸೀಳಿದು ಬಿಸುಟು ಭೀಮನ
ಗೆಲಿದನೆಂಟಂಬಿನಲಿ ಗಂಗಾಸೂನು ಸಮರದಲಿ ೧೭

ಮೇಲೆ ಹೇಳಿಕೆಯಾಯ್ತು ವರ ಪಾಂ
ಚಾಲರಿಗೆ ಚೈದ್ಯರಿಗೆ ಮತ್ಸ್ಯ ನೃ
ಪಾಲ ಸೃಂಜಯರಾದಿಯಾದಕ್ಷೋಹಿಣೀ ದಳಕೆ
ಸೂಳು ಮಿಗೆ ಗರ್ಜಿಸುವ ಘನ ನಿ
ಸ್ಸಾಳ ಕೋಟಿಯ ಗಡಣದೊಳು ಕೆಂ
ಗೋಲ ಮಳೆಗರೆಯುತ್ತ ಗಂಗಾಸುತನ ಕೆಣಕಿದರು ೧೮

ಪೂತು ಮಝರೇ ಪಾಂಡುಸೈನ್ಯ
ವ್ರಾತ ಕವಿದುದು ಕೇಳಿರೈ ಮು
ಯ್ಯಾಂತುದೇ ಬರಹೇಳಿ ವೈವಸ್ವತನ ಪರಿಜನವ
ಘಾತಿಸುವೆನದನೆನುತ ತೊಡಚಿದ
ನೂತನಾಸ್ತ್ರಂಗಳಲಿ ರಿಪು ಸಂ
ಘಾತವನು ಕೆಡೆಯೆಚ್ಚು ಪಲ್ಲಟಿಸಿದನು ಕಡಿಕಡಿಯ ೧೯

ಕಾಳೆಗಕ್ಕಿದಿರೊಡ್ಡಿ ಭೀಷ್ಮನ
ಕೋಲ ಹತಿಯಲಿ ಮಡಿದ ರಿಪು ಭೂ
ಪಾಳಿ ಹರಿದುದು ಸುರರ ಹೆಂಡಿರ ಮುರಿದ ಮುಂದಲೆಯ
ಮೇಲೆ ಮೇಲೈತಪ್ಪ ವೀರ ಭ
ಟಾಳಿಯೊಡನಲ್ಲಿಂದ ಸುಭಟರು
ಸೂಳೆಬಂಟಿಕೆಯಿಂದ ಹೊಯ್ದಾಡಿದರು ನಾಕದಲಿ ೨೦

ಮುಡುಹುಗಳೊಳೊಡೆಹೊಯ್ವ ಕಾಲಲಿ
ಮಿಡಿಯ ಮೆಟ್ಟುವ ತಂಬುಲವ ತೆಗೆ
ದಿಡುವ ಕರೆಕರೆದೊರೆಯನುರ್ಚುವ ನಾಯ ಹೆಸರಿಡುವ
ತೊಡರುಗಟ್ಟುವ ಬೈವ ಭಟ್ಟರ
ಬಿಡುವ ಕಾದುವ ವೀರ ಭಟರಿಂ
ದಿಡಿದುದಮರಾವತಿಯ ಸೊಂಪಿನ ಸೂಳೆಗೇರಿಗಳು ೨೧

ಸುರರಿಗತ್ತಣ ಗಜಬಜವ ಪರಿ
ಹರಿಸಲರಿಯದೆ ವೀರ ಭೀಷ್ಮನ
ಧುರವನೀಕ್ಷಿಸಲಿತ್ತಲಳವಡದೇನನುಸುರುವೆನು
ಅರರೆ ಅಂಬರಸರಸಿ ರಿಪುಭಟ
ವರರ ಮುಖಪಂಕರುಹವನ ವಿ
ಸ್ತರಣವಾದುದೆನಲ್ಕೆ ಗಂಗಾಸೂನು ಕೈಕೊಂಡ ೨೨

ಕಡುಮನದ ಕೈಸೂರೆಗಾರರ
ನಡಗೆಡಹಿದನು ಧುರದ ಗೆಲವಿಗೆ
ಮಿಡುಕುವರನಸಿಯರೆದು ನೆಗ್ಗಿದನೇನನುಸುರುವೆನು
ಗಡಣೆಗರನೊಂದೊಂದು ಶರದಲಿ
ತಡೆಗಡಿವ ಸಂರಂಭ ಭೀಷ್ಮನ
ಬಿಡುಧನುವಿನುಬ್ಬಟೆಗೆ ತೆರಳಿತು ಮಕುಟವರ್ಧನರು ೨೩

ಬಳಸಿ ತಾರೆಗಳೆಸೆಯೆ ಚಂದ್ರರು
ಹಲಬರಾದರೊ ನಭದೊಳೆನೆ ಹೊಳೆ
ಹೊಳೆವ ಮಣಿ ಮೌಳಿಗಳು ಸಂದಣಿಸಿದವು ಗಗನದೊಳು
ಗೆಲಿದನಹಿತಾನೀಕವನು ರಿಪು
ಬಲ ದಿಶಾಪಟ ಭೀಷ್ಮನಿತ್ತಲು
ಕಲಿ ಯುಧಿಷ್ಠಿರ ನೃಪನ ವಿರಥನ ಮಾಡಿದನು ಶಲ್ಯ ೨೪

ಅರಸನನು ಹಿಂದಿಕ್ಕಿ ನಡೆದು
ತ್ತರನು ಶಲ್ಯನೊಳಾಂತು ನಿಂದನು
ಸರಳ ಸರಿವಳೆಗರೆಯೆ ಕಡಿದನು ಶಲ್ಯಭೂಪಾಲ
ಧುರವಿಶಾರದನಹೆ ವಿರಾಟನ
ಹಿರಿಯ ಮಗ ನೀನಂದು ಗೋಕುಲ
ಹರಣದಲಿ ಕಲಿಯಾಗಿ ಕಾದಿದೆಯೆನುತ ತೆಗೆದೆಚ್ಚ ೨೫

ಎಸಲು ಶಲ್ಯನ ಸರಳ ಖಂಡಿಸಿ
ನಿಶಿತ ಬಾಣದಲುತ್ತರನು ತೆಗೆ
ದೆಸಲು ಖತಿಯಲಿ ಶಲ್ಯನಭಿಮಂತ್ರಿಸಿ ಮಹಾಶರವ
ಅಸಮಬಲನಾಕರ್ಣಪೂರದಿ
ನೆಸೆ ವಿರಾಟಕುಮಾರನಸು ಲಂ
ಘಿಸಿತು ಕಾಯವನೊದೆದು ಖಚರೀಜನದ ಕುಚಯುಗಕೆ ೨೬

ವೀರ ಶಲ್ಯ ದ್ರೋಣ ಕೃಪ ಭಾ
ಗೀರಥಿಯ ನಂದನರು ಪಾಂಡು ಕು
ಮಾರಕರ ಸೇನೆಯೊಳು ಗೆಲಿದಳು ಮುರಿದರತಿಬಲರ
ಧೀರ ಸುಭಟರ ರಕ್ತಧಾರಾ
ಸಾರ ಲೋಹಿತ ಬಿಂಬವನು ಘನ
ವಾರಿಯಲಿ ತೊಳೆದಂತೆ ಪಶ್ಚಿಮಜಲಧಿಗಿನನಿಳಿದ ೨೭

ಸೂಳವಿಸಿದವು ಸನ್ನೆಯಲಿ ನಿ
ಸ್ಸಾಳ ಸೇನೆಯ ತೆಗೆಸಿದವು ಹೆ
ಗ್ಗಾಳೆ ವೊಳಗಿದವಾನೆವರೆ ಗಜರಿದವು ಡೌಡೆಗಳು
ಪಾಳಯಕೆ ತಿರುಗಿದರಖಿಲ ಭೂ
ಪಾಲಕರು ಗಂಗಾಸುತನ ಪಾಂ
ಚಾಲಕನ ನೇಮದಲಿ ಕೌರವ ಪಾಂಡುನಂದನರು ೨೮

ಇತ್ತಲೀ ಸಂಗ್ರಾಮ ಮಹಿಯೊಳು
ಮೃತ್ಯುವಿನ ಭಾಗ್ಯೋದಯವು ಕೈ
ವರ್ತಿಸಿತು ವೈವಸ್ವತಾಭಿಪ್ರಾಯ ಸಿದ್ಧಿಸಿತು
ಮುತ್ತಿಗೆಯ ಜಂಬುಕ ಖಗಾಳಿಯ
ಚಿತ್ತ ನಿಶ್ಚಲವಾಯ್ತು ಸಲೆ ಮನ
ವುತ್ತರೋತ್ತರವಾಯ್ತು ಶಾಕಿನಿ ಡಾಕಿನೀ ಜನದ ೨೯

ಹೆಗಲ ಪಕ್ಕಲೆಗಳಲಿ ಕವಿದುದು
ವಿಗಡ ಪೂತನಿವೃಂದ ಜೀರ್ಕೊಳ
ವಿಗಳ ಕೈರಾಟಳದೊಳೈದಿತು ಶಾಕಿನೀ ನಿಕರ
ತೊಗಲ ಕುನಿಕಿಲ ಬಂಡಿಗಳಲಾ
ರ್ದಗಿದು ಹೊಕ್ಕರು ರಕ್ಕಸರು ಬಾ
ಯ್ಬಿಗೆದು ಬಂದುದುಲೂಕ ಜಂಬುಕ ಕಾಕ ಸಂದೋಹ ೩೦

ತಳಿತ ತಲೆಯೋಡಿನೊಳು ಶೋಣಿತ
ಜಲವ ಕಾಸಿದರೆಳೆಯ ಕರುಳನು
ಹಿಳಿದು ಹಿಂಡಿದರಿಕ್ಕಿದರು ಕುಸುರಿಗಳ ಮೂಳೆಗಳ
ತೆಳುದೊಗಲ ಚಕ್ಕಳದ ಕೈ ಚ
ಪ್ಪಳೆಯವರು ಹಂತಿಯಲಿ ಕುಡಿದರು
ಕೆಳೆಯರಿಗೆ ಸವಿದೋರಿ ಪೂತನಿನಿಕರ ಗಡಣದಲಿ ೩೧

ಕರುಳನಣಲೊಳಗಡಸಿ ನಲಿದುದು
ಮರುಳ ಬಳಗ ಕಪಾಲ ಪಾತ್ರೆಯ
ನರೆನೆಗಹಿ ಕೋಕಿನಲಿ ಕುಡಿದರು ಮುಕ್ತಕೇಶಿಯರು
ವೊರೆವೆಣನನೊಡೆ ಮೆಲುತ ಹಾಡಿತು
ದುರುಳ ದಾನವನಿಕರ ಪಾಂಡವ
ಕುರುನೃಪರ ಹರಸಿದುದು ಕೈಪರೆಗುಟ್ಟಿ ಭೂತಗಣ ೩೨

ಸಿಡಿದ ಕಣ್ಣಾಲಿಗಳನಾಯಿದು
ಕುಡುಕುಗೊಂಡವು ಕಾಗೆಗಳು ಹಿ
ಮ್ಮಡಿಯ ಹೊರಳಿಯ ನರವ ಸೆಳೆದವು ಜಂಬುಕಾದಿಗಳು
ಅಡಗ ಕದುಕಿರಿದೊರಲಿ ಕರೆದವು
ಗಡಣವನು ಗೂಗೆಗಳು ರಕುತದ
ಕಡಲಲೋಕುಳಿಯಾಡಿದವು ಭೇತಾಳ ಕಾಳಿಯರು ೩೩

ತೆಳುದೊಗಲ ನಿಡುಸೋಗೆಯುಡುಗೆಯ
ನೆಳಗರುಳ ಸಿಂಗಾರದುರುಬಿನ
ಕೆಳದಿಯರ ಕೈನೇಣ ಕಿರಿದೊಟ್ಟಿಲಿನ ಬೊಂಬೆಗಳ
ಎಳವಿದುಳ ಕಜ್ಜಾಯ ಮೂಳೆಯ
ಹಳುಕು ಕಾಳಿಜದಟ್ಟುಗುಳಿಗಳ
ಕೆಳೆಗಳೊಳು ಕೊಡಗೂಸು ಪೂತನಿ ನಿಕರವೊಪ್ಪಿದವು ೩೪

ತೂಳ ಬರೆ ಕುಣಿದುದು ಕಬಂಧದ
ಜಾಲದೊಡನೆ ಪಿಶಾಚಗಣ ಭೇ
ತಾಳಗಣ ಕೈಪರೆಯ ಬಡಿದುದು ಶಾಕಿನೀನಿವಹ
ಸಾಲು ಮಿಗೆ ಸೊಗಸಿದುದು ರಣ ಭೂ
ತಾಳಿಯಲಿ ಮತ್ತಿತ್ತ ಕೇಳ್ಪುದು
ಪಾಳಯಂಗಳೊಳೆರಡರಲಿ ಸಂಗರ ಮಹೋತ್ಸಾಹ ೩೫

ಹಿಳಿದ ಲೋಹದ ಸೀಸಕಂಗಳ
ಬಲಿಸಿದರು ಹೋಳಾದ ಕವಚವ
ಹೊಲಿಸಿದರು ಬಾಹುರಕೆ ಸವಗದ ಬಿರುಕ ಬೆಸಸಿದರು
ಕಳಚಿದಾಯುಧದಾಯತದ ಕೀ
ಲ್ಗೊಳಿಸಿದರು ಖಡ್ಗಕ್ಕೆ ಕುಂತವ
ಕಳೆದು ಕಾವನು ತೊಡಿಸುತಿರ್ದುದು ಸೇನೆಯೆರಡರಲಿ ೩೬

ತಡಿಯ ಬಲಿಸುವ ಗುಳನ ರೆಂಚೆಯ
ಗಡಣಿಸುವ ಹಕ್ಕರಿಕೆಗಳನಾ
ಯ್ದುಡಿಸಿ ಹೊಲಿಸುವ ಕಬ್ಬಿಗಳ ಮಿಗೆ ಬಲಿವ
ಒಡೆದ ದೂಹತ್ತಿಗೆಗೆ ಕೀಲ್ಗಳ
ನಡಸಿ ಬೆಟ್ಟಿದ ಗಾಲಿಗಚ್ಚನು
ತೊಡಿಸುತಿರಲಾಯ್ತೆರಡು ಬಲದೊಳು ನಿದ್ರೆಗವಮಾನ ೩೭

ಅಸಿಯ ಮಸೆಸುವ ಮುರಿದ ಲೌಡಿಯ
ಬೆಸುವ ಕುಂತದ ಧಾರೆಗಳ ಥಾ
ಳಿಸುವ ನೆರೆಸೊಪ್ಪಾದ ಹಿಳುಕಿನ ಗರಿಯ ಕೀಲಿಸುವ
ಹೊಸ ತಿರುವ ಕಟ್ಟುವ ಕಠಾರಿಯ
ಮಸೆವ ಹಲಗೆಯ ಬಲಿವ ಸುರಗಿಯ
ಬಸೆಯ ಬೆಳಸುವ ವೀರ ಭಟರೊಪ್ಪಿದರು ಕಟಕದಲಿ ೩೮

ಹರಿದ ಕೊರಳನು ಬಿಗಿವ ಉರದೊಳು
ಮುರಿದ ಬಾಣವ ಕೀಳ್ವ ಹೊಟ್ಟೆಯ
ನಿರಿಗರುಳನೊಳಗಿಕ್ಕಿ ಹೊಲಿಸುವ ಮದ್ದುಗಳನಿಡಿವ
ಉರಿವ ಸೇಕದ ನಸ್ಯದೊಳು ಹದ
ನರಿವ ತುರಗದ ವೈದ್ಯ ತತಿಯೆ
ಚ್ಚರಿಕೆಯಲಿ ಸಂತೈಸಿದರು ವಾಜಿಗಳ ವೇದನೆಯ ೩೯

ಒಡಲಿನೊಳು ಮುರಿದಿದ್ದ ಸಬಳವ
ನುಡಿಯಲೀಯದೆ ಕೀಳ್ವ ಮದ್ದನು
ಗಿಡಿವ ಜೇವಣಿಗೆಯೊಳು ಸಪ್ರಾಣಿಸುವ ದುರ್ವ್ರಣವ
ತೊಡೆದು ಕಟ್ಟುವ ಹಸ್ತಿವೈದ್ಯರ
ಗಡಣವುಭಯದೊಳೆಸೆದವಂತ್ಯದ
ಕಡಲ ರಭಸಕೆ ತೊಡಕನಿಕ್ಕಿತು ಬಹಳ ಬಲಜಲಧಿ ೪೦

ಬಾದಣಿಸಿದೇರುಗಳ ಬಾಯೊಳು
ಕಾದ ಬಾರಂಗಿಗಳನಳತೆಗೆ
ಕೋದು ವಾಮದೊಳೆಯ್ದೆ ಹಿಡಿದರು ತೈಲಧಾರೆಗಳ
ಆದ ಮೈಗಂಡಿಯೊಳು ರಕುತವ
ಶೋಧಿಸುತ ಹಳದುಪ್ಪವನು ತೊಡೆ
ದಾದರಿಸಿದುದು ವೈದ್ಯಸಂತತಿ ವೀರ ಭಟರುಗಳ ೪೧

ಖಡುಗದಡವೊಯ್ಲುಗಳಲಡುಮ
ದ್ದಡಸಿದರು ಸೂಕರನ ತುಪ್ಪವ
ತೊಡೆದರಿರಿದೇರಿನೊಳು ಬಿಟ್ಟರು ತೈಲಧಾರೆಗಳ
ಕುಡಿಸಿದರು ಮಂತ್ರೋದಕವನೊಳ
ಗಡಸಿ ಕರುಳನು ಮುಂಚ್ಚಿ ಮಂತ್ರಿಸಿ
ತೊಡೆದರಖಿಳೌಷಧಿಗಳನು ನೃಪಸೇನೆಯೆರಡರಲಿ ೪೨

ಆರನೆಯ ಸಂಧಿ

ಸೂ. ರಾಯದನುಜ ಘರಟ್ಟನಂಭೋ
ಜಾಯತಾಕ್ಷನ ಖಾತಿಯನು ಗಾಂ
ಗೇಯ ಭಯಭಕ್ತಿಯಲಿ ಗೆಲಿದನು ವರ ಸುದರ್ಶನವ

ಕೇಳು ಜನಮೇಜಯ ಧರಿತ್ರೀ
ಪಾಲ ದಿನಕರನುದಯದಲಿ ಮುಂ
ಗಾಳೆಗದ ಗಾಢಾಭಿಲಾಷರು ಬಂದು ಕಣನೊಳಗೆ
ಮೇಲುನೆಲನರಿದಖಿಲ ಕುರು ಭೂ
ಪಾಲನವರೊಡ್ಡಿದರು ಲಕ್ಷ್ಮೀ
ಲೋಲನಾಜ್ಞೆಯಲಿವರು ಬಲಿದರು ತಮ್ಮ ಮೋಹರವ ೧

ದಳವೆರಡು ದಳಪತಿಗಳಿಬ್ಬರ
ತಳಿತ ಸನ್ನೆಯ ಚೌರಿಯಲಿ ಬಿಡೆ
ಹಳಚಿದುದು ಹೊಯ್ದಾಡಿ ಬಿದ್ದುದು ಪಾಯದಳವಂದು
ತುಳಿದು ಹೊಕ್ಕವು ದಂತಿಘಟೆ ದಳ
ವುಳಿಸಿ ಹರಿದವು ತೇರುಗಳು ತೋಳ್
ಬಳಲಿ ಹೊಯ್ದಾಡಿದರು ರಾವುತರಸಮ ಸಮರದಲಿ ೨

ಏನ ಹೇಳುವೆನುಭಯ ಬಲದಲಿ
ಲೂನ ನಿವಹದ ಹಯವನಡೆಗೆಡೆ
ವಾಸೆಗಳ ಹೊದರೆದ್ದು ಮುಗ್ಗಿದ ರಥದ ವಾಜಿಗಳ
ಮಾನವರ ಕಡಿಖಂಡ ದೊಂಡೆಯ
ನೇನನೆಂಬೆನು ಹರಿವ ರುಧಿರಾಂ
ಭೋನಿಧಿಯ ಹರಹುಗಳ ಪೂರದ ವಿಗಡ ವಿಗ್ರಹವ ೩

ಅಳಿದುದೆರಡರ ಚೂಣಿ ದೊರೆಗಳ
ಬಲಕೆ ಹೇಳಿಕೆಯಾಯ್ತು ಘನ ಸಂ
ಕುಲ ಸುವಿಗ್ರಹ ಸಾಧನರು ಕೈಮಾಡಿ ಕಡಿವಡೆಯೆ
ದಳವುಳಿಸಿದನು ಭೀಮ ಕೌರವ
ದಳವ ತರುಬಿದನಡ್ಡಬಿದ್ದರಿ
ಬಲದ ಸುಭಟರಿಗಿತ್ತನಮರಾವತಿಯ ಸಂಪದವ ೪

ಮುರಿದು ಬಹ ನಿಜಸೇನೆಗಭಯದ
ಸೆರಗ ಬೀಸುತ ಭೀಮಸೇನನ
ತರುಬಿ ನಿಂದನು ಭೀಷ್ಮ ಬಿಗಿದನು ಸರಳಲಂಬರವ
ತೆರಹುಗೊಡವಂಬುಗಳು ಭೀಮುಗೆ
ಬೆರಗು ಬಲಿದುದು ಹೊಕ್ಕು ಸಾತ್ಯಕಿ
ಯಿರಿದು ಭೀಷ್ಮನ ಬಲದಲೂಡಿದನಖಿಳ ಖಗಕುಲವ ೫

ಬಳಿಕ ಸಾತ್ಯಕಿ ಭೀಷ್ಮರಿಗೆ ಬಲು
ಗಲಹ ಬಲಿದುದು ವಿಲಯ ರುದ್ರನ
ನಿಲವನೊಚ್ಚತಗೊಂಡ ಪರಬಲದೊಳಗೆ ಗಾಂಗೇಯ
ತಳಪಟವ ಮಾಡಿದನು ಭಾಷೆಯ
ಬಳಿಗೆ ಕೊಂದನು ಹತ್ತು ಸಾವಿರ
ನೆಲನ ವಲ್ಲಭರನು ಯುಧಿಷ್ಠಿರರಾಯ ಸೇನೆಯಲಿ ೬

ಬೀಳಲವನೀಪತಿಗಳತಿ ಹೀ
ಹಾಳಿಯಲಿ ಸಾತ್ಯಕಿ ಮುಳಿದು ಬಲು
ಗೋಲಿನಲಿ ಗಂಗಾಕುಮಾರನ ಸಾರಥಿಯನೆಸಲು
ಮೇಲುಗಾಳೆಗದವರ ಸೇರಿತು
ಸೋಲು ಕುರುಪತಿಗಾಯ್ತು ಕಿರಣದ
ಗೂಳಯವು ಪಡುವಣ ಸಮುದ್ರಕೆ ತೆಗೆಯಲಿನನಿಳಿದ ೭

ದಿನವೆರಡು ಹಿಂದಾದುದಿದು ಮೂ
ರನೆಯ ದಿವಸದ ಬಹಳ ವಿಗ್ರಹ
ದನುವನಾಲಿಸು ರಾಯ ಜನಮೇಜಯ ಮಹೀಪಾಲ
ದಿನಪನುದಯಾಚಲದ ಚಾವಡಿ
ವನೆಗೆ ಬರೆ ಬಲವೆರಡು ಗಳ ಗ
ರ್ಜನದಿ ಬಂದೊಡ್ಡಿದುವು ಕಳನೊಳು ಖತಿಯ ಪಡಪಿನಲಿ ೮

ಸೂಳು ಮಿಗಲಳ್ಳಿರಿವ ನಿಸ್ಸಾ
ಳೋಳಿಗಳ ತಂಬಟದ ಕೊಂಬಿನ
ಗಾಳುಗಜರಿನ ಕಹಳೆಗಳ ಕಳಕಳದ ಬೊಗ್ಗುಗಳ
ಮೇಳವಣೆ ಭುಗಿಲಿಡಲು ಬೊಬ್ಬೆಯ
ಘೋಳ ಘೋಷದ ರಭಸ ದೆಸೆಗಳ
ಸೀಳೆ ಸಿಡಿಲೆದ್ದೆರಡು ಬಲ ಹೊಯ್ದಾಡಿತೊಡಗಲಸಿ ೯

ಜೋಳವಾಳಿಯೊಳುಂಡು ಮಾಡಿದ
ಸಾಲವನು ತಲೆಗಳಲಿ ತಿದ್ದಿದ
ರಾಳ ತರುಬುವ ಪತಿಗೆ ಹರುಷವ ಮಾಡಿ ತಮತಮಗೆ
ಕಾಲನೂರ್ಬೆದದು ಸುರಸ್ತ್ರೀ
ಜಾಲ ನೆರೆಯದು ಗಗನ ಸುಭಟರ
ಸಾಲೊಳಡಗಿತು ಚಿತ್ರವೆನೆ ಹೊಯ್ದಾಡಿತುಭಯಬಲ ೧೦

ಬರಲಿ ಸಮರಕೆ ಸಾತ್ಯಕಿಯ ನೀ
ಕರೆಯೆನುತ ಬಿಲುದುಡುಕಿ ರಥದಲಿ
ಸರಿಸತಾಳಧ್ವಜವನೆತ್ತಿಸಿ ಸಮರಥರ ನೆರಹಿ
ಸರಳ ತೂಗುತ ಮಾರುಬಲವನು
ತರುಬಿ ನಿಂದನು ಭೀಷ್ಮನಗ್ಗದ
ಬಿರುದ ಸಂಭಾವಿಸುತ ಪಾಠಕಕೋಟಿ ಗಡಬಡಿಸಿ ೧೧

ಕಾಲಯಮನೋ ಭೀಷ್ಮನೋ ಘಡ
ಮೇಳವೇ ಮಝು ಭಾಪು ಮಾರಿಯ
ತಾಳಿಗೆಗೆ ತುತ್ತಾದವೇ ತಡವೇಕೆ ತೆಗೆಯೆನುತ
ಆಳು ಮುರಿದುದು ಮೋಹರದ ಭೂ
ಪಾಲಕರು ಹುರಿಯೊಡೆದು ದೊರೆಗಳ
ಮೇಲೆ ಬಿಸುಟರು ವೀರ ಗಂಗಾತನುಜನುಪಟಳವ ೧೨

ಸೋಲ ಮಿಗಲೊಳಸರಿವ ಬಿರುದರ
ಬೀಳಗೆಡಹಿಸಿ ಕಪಿಯ ಹಳವಿಗೆ
ಗೋಲನೆತ್ತಿಸಿ ಕೆಲಬಲದ ಮನ್ನೆಯರ ಕೈವೀಸಿ
ಆಲಿಯಲಿ ಕಿಡಿಸೂಸೆ ಮೀಸೆಯ
ಮೇಲುದಿರುಹಂತಲೌಡುಗಚ್ಚಿ ಕ
ರಾಳರೋಷ ಮಹೋಗ್ರವೀರನು ಪಾರ್ಥನಿದಿರಾದ ೧೩

ತೊಲತೊಲಗು ಕಲಿ ಭೀಷ್ಮ ವೃದ್ಧರಿ
ಗೆಳಭಟರ ಕೂಡಾವುದಂತರ
ವಳಿಬಲರ ಹೆದರಿಸಿದ ಹೆಕ್ಕಳವೇಕೆ ಸಾರೆನುತ
ತುಳುಕಿದನು ಕೆಂಗೋಲ ಜಲಧಿಯ
ನೆಲನದಾವುದು ದಿಕ್ಕದಾವುದು
ಸಲೆ ನಭೋಮಂಡಲವದಾವುದೆನಲ್ಕೆ ಕಲಿ ಪಾರ್ಥ ೧೪

ಪೂತುರೇ ಕಲಿ ಪಾರ್ಥ ವಿಶಿಖ
ವ್ರಾತಮಯವಾಯ್ತವನಿ ಕಾರ್ಮುಕ
ಭೂತನಾಥನ ಗರುಡಿಯಲ್ಲಾ ಕಲಿತ ಮನೆ ನಿನಗೆ
ಆತುಕೊಳ್ಳಾದಡೆಯೆನುತ ಕಪಿ
ಕೇತನನ ಶರಹತಿಯನಾಂತಾ
ಮಾತು ಹಿಂಚಿತು ಕಡಿದು ಬಿಸುಟನು ಕೃಷ್ಣ ಬೆರಗಾಗೆ ೧೫

ಆ ಸಮಯದೊಳು ರಣದೊಳೌಕಿದ
ರಾ ಸುಯೋಧನ ಶಲ್ಯ ಸಲೆ ದು
ಶ್ಶಾಸನನು ಕೃಪ ಶಕುನಿ ಗುರುಸುತರಾದಿ ಯಾದವರು
ಸೂಸಿದರು ಸರಳುಗಳನರ್ಜುನ
ಘಾಸಿಯಾದನು ವಿಲಯ ಮೇಘದ
ಮೀಸಲಿವ ಮಳೆಗಾಲವೆನೆ ಮೋಹಿದುದು ಶರಜಾಲ ೧೬

ಕುದುರೆ ಕಂಗೆಟ್ಟವು ಮುರಾರಿಯ
ಹೃದಯ ಸಂಚಲವಾಯ್ತು ಗಾಲಿಗ
ಳದುರಿದವು ಗರುವಾಯಿಗೆಟ್ಟನು ಮೇಲೆ ಹನುಮಂತ
ಹೆದರಿದರು ನಾಯಕರು ಪಾಂಡವ
ರದಟು ಮುರಿದುದು ಸುರರು ಚಿಂತಿಸಿ
ಕುದಿದರರ್ಜುನಪಕ್ಷಪಾತ ವ್ಯರ್ಥವಾಯ್ತೆಂದು ೧೭

ತೆರಳುವನೆ ಬಿಲುಗಾರರಿಗೆ ವರ
ಗುರುವಲಾ ಕಲಿ ಪಾರ್ಥನನಿಬರ
ಸರಳ ಕಡಿದನು ಕೃಪನನೆಚ್ಚನು ಗುರುಸುತನ ರಥವ
ಉರುಳೆಗಡಿದನು ಶಲ್ಯನನು ಹೇ
ವರಿಸಲೆಚ್ಚನು ಕೌರವನ ಹೇ
ರುರದಲಂಬನು ಹೂಳಿದನು ಸೀಳಿದನು ಸಮರಥರ ೧೮

ಏರುವಡೆದನು ಶಲ್ಯ ರಕುತವ
ಕಾರಿದನು ದುಶ್ಶಾಸನನು ಕೈ
ಮೀರಿ ಕೈಕೊಂಡೆಚ್ಚು ನೊಂದನು ಮತ್ತೆ ಗುರುಸೂನು
ಹೇರಿದರು ಹಿಳುಕುಗಳ ಮೈಯಲಿ
ಜೋರು ಮಸಗಲು ಭೀಷ್ಮ ಕಡುಗಾ
ಹೇರಿದನು ರೋಷಾಗ್ನಿವಿಕಟಜ್ವಾಲೆಮುಖನಾದ ೧೯

ಮೊಗದ ಹೊಗರವಗಡಿಸೆ ಸುಯಿಲಲಿ
ಹೊಗೆಯು ಹೊದರಂಕುರಿಸೆ ಬಿಡುಗ
ಣ್ಣುಗಳೊಳಕ್ಕುದು ಕೆಂಪು ಸೊಂಪಡಗಿತು ಮುಖಸ್ನೇಹ
ತೆಗೆವೆನರ್ಜುನನಸುವನೆನುತಾ
ಳುಗಳ ದೇವನು ಭೀಷ್ಮನಡಿಗಡಿ
ಗೊಗುಮಿಗೆಯ ಕೋಪದಲಿ ಕೋದನು ಸರಳಿನಲಿ ನರನ ೨೦

ನೊಂದು ಸೈರಿಸಿ ಮತ್ತೆ ಸರಳಿನ
ಸಂದಣಿಯ ಸೈಗರೆದನರ್ಜುನ
ನಿಂದುಧರ ಮಝ ಭಾಪುರೆನೆ ಪಸರಿಸಿದವಂಬುಗಳು
ಮುಂದೆ ನಿಲಲರಿಯದೆ ವಿತಾಳಿಸಿ
ಮಂದಗತಿಯೊಳು ಕೆಲಸಿಡಿದು ಹರಿ
ನಂದನನ ಬಿಡದೆಸುತ ಬಂದನು ಭೀಷ್ಮ ಮುಳಿಸಿನಲಿ ೨೧

ಎತ್ತಲೊಲೆದನದೆತ್ತ ಸರಿದನ
ದೆತ್ತ ಜಾರಿದನೆತ್ತ ತಿರುಗಿದ
ನೆತ್ತ ಹಿಂಗಿದನೆತ್ತಲೌಕಿದನೆತ್ತಲುರುಬಿದನು
ಅತ್ತಲತ್ತಲು ರಥ ಹಯವ ಬಿಡ
ದೊತ್ತಿ ಬೀದಿಗೆ ನೂಕಿ ಪಾರ್ಥನ
ಮುತ್ತಯನ ಸಂಮುಖಕೆ ಬಿಡದೌಕಿದನು ಮುರವೈರಿ ೨೨

ಕೆರಳಿದನು ಕಲಿ ಭೀಷ್ಮನರ್ಜುನ
ನುರವಣೆಯ ಗೆಲುವರೆ ಮುರಾರಿಯ
ಭರವಸವ ತಗ್ಗಿಸಿದಡಲ್ಲದೆ ಕಾದಲರಿದೆನುತ
ಹರಿಯ ಸಿರಿಯೊಡಲಿನಲಿ ಸರಳಿನ
ಸರಿವಳೆಯ ಸೈಗರೆಯೆ ಜೋಡಿನ
ಸರಪಳಿಯಲಕ್ಕಾಡಿದವು ಕಲಿ ಭೀಷ್ಮನಂಬುಗಳು ೨೩

ಮತ್ತೆ ರಥವನು ಹರಿಸಿ ಭೀಷ್ಮನ
ಹತ್ತೆ ಬರೆ ಕಟ್ಟಳವಿಯಲಿ ಹಾ
ಮುತ್ತಯನು ಸಿಲುಕಿದನು ಶಿವಶಿವಯೆನುತ ಬಲ ಬೆದರೆ
ಹತ್ತು ಶರದಲಿ ಕೃಷ್ಣರಾಯನ
ಮತ್ತೆ ಮುಸುಕಿದ ಬಹಳ ಭಾರ್ಗವ
ದತ್ತ ಬಾಣವ ತೊಡಚಿ ದೇವನ ನೊಸಲ ಕೀಲಿಸಿದ ೨೪

ಕೆಂಗರಿಯ ಮರಿದುಂಬಿ ತಾವರೆ
ಗಂಗವಿಸುವವೊಲಸುರರಿಪುವಿನ
ಮಂಗಳಾನನಕಮಲದಲಿ ಶರವಾಳೆ ಗರಿಗಡಿಯೆ
ತುಂಗವಿಕ್ರಮನಂಬ ಕಿತ್ತು ತ
ದಂಗರಕ್ತವಿಷೇಕ ರೌದ್ರಾ
ಲಿಂಗಿತನು ಬಲುಖತಿಯ ಹಿಡಿದನು ಭೀಷ್ಮನುಪಟಳಕೆ ೨೫

ಕೆಂಪ ಕಾರಿದವಾಲಿಗಳು ಮೈ
ಕಂಪಿಸಿದುದಡಿಗಡಿಗೆ ರೋಷದ
ಬೆಂಪಿನೊಳು ತಗ್ಗಿದನು ಗಂಟಿಕ್ಕಿದನು ಹುಬ್ಬುಗಳ
ಸೊಂಪುಗೆಟ್ಟುದು ಸಿರಿವದನ ಮನ
ದಿಂಪು ಬೀತುದು ಭಕ್ತ ಮೋಹದ
ಲಂಪು ಮಸುಳಿತು ಬಿಸುಟು ಕಳೆದನು ಹಯದ ವಾಘೆಗಳ ೨೬

ಕೆಂಡವಾಗಲಿ ಲೋಕ ದಿವಿಜರ
ಹೆಂಡಿರೋಲೆಯು ಕಳೆದು ಹೋಗಲಿ
ದಿಂಡುಗೆಡೆಯಲಿ ಮೇರು ಮೇದಿನಿ ನಿಲಲಿ ವಿತಳದಲಿ
ಗಂಡುಗೆಡಿಸಿದರಿಲ್ಲ ದಾನವ
ದಿಂಡೆಯರು ಹಲರೆಮ್ಮೊಡನೆ ಮಾ
ರ್ಕೊಂಡವರು ಮಾಮಾಪ್ರತಿಜ್ಞೆಯ ತೊಡಕು ಬೇಡೆಂದ ೨೭

ಸಕಲ ಜಗದಳಿವಿಲಿನಲಿ ರುದ್ರಾ
ತ್ಮಕನು ವಿಷ್ಣುವೆ ಎಂಬ ನುಡಿ ಸು
ವ್ಯಕುತವಾಗಲು ತೋರಿದನು ಘನರೋಷ ತಾಮಸವ
ಚಕಿತವದನದ ಕೆಂಪಿನಬುಜಾಂ
ಬಕಯುಗಳನೊಲೆದೊಲೆದು ರೋಷ
ಪ್ರಕಟಪಾವಕ ವಿಸ್ಫುಲಿಂಗಿತನಾದನಡಿಗಡಿಗೆ ೨೮

ಎಲೆಲಿದೆತ್ತಣ ಧರಣಿಯೆತ್ತಣ
ಕುಲಗಿರಿಗಳೆತ್ತಣ ದಿಶಾಗಜ
ಕುಲವಿದೆತ್ತಣ ಸುರರಿದೆತ್ತಣ ಹರ ಚತುರ್ಮುಖರು
ಸಲಹುವೈಯನು ಮುಳಿದು ಲೋಕದ
ಕೊಲೆಗೆಲಸಕಂಗೈಸಿದನೆ ಹಾ
ಪ್ರಳಯವಾದುದಕಾಲದಲಿಯೆಂದಮರರೆದೆಯಾರೆ ೨೯

ನಳಿನಪತ್ರೋದಕದವೊಲು ಮಾ
ರೊಲೆದುದಬುಜಭವಾಂಡವಂಬುಧಿ
ಯಿಳಿದು ಗುಲ್ಫ ದ್ವಯಸವಾದುದು ಕಮಠನೆದೆಯೊಡೆಯೆ
ನೆಲನನಿದ ಹಿಂದಿಕ್ಕಿಕೊಂಬ
ಗ್ಗಳೆಯರಾರೊ ಶಿವಶಿವಾ ಜಗ
ದಳಿವು ಜೋಡಿಸಿತೆನುತ ನಡುಗಿದನಬುಜಭವನಂದು ೩೦

ಮುರಮಥನ ಕೆಲ್ಲೈಸಿ ನೋಡಿದ
ನುರು ಭಯಂಕರ ಚಕ್ರವನು ದು
ರ್ಧರುಷಧಾರಾ ಲೂಯಮಾನ ನಿಶಾತಚಕ್ರವನು
ತರಳ ತರಣೀ ಚಕ್ರವನು ಸಂ
ಗರ ವಿನಿರ್ಜಿತ ಚಕ್ರವನು ಭಯ
ಭರ ವಿವರ್ಜಿತ ಚಕ್ರವನು ಕಡುಗೋಪ ಕುಡಿಯಿಡಲು ೩೧

ನಿಶಿತ ಧಾರೆಯ ಹೊಳಹು ಸೂರ್ಯನ
ಮುಸುಕಿದುದು ಪರಿಲೂನದೈತ್ಯ
ಪ್ರಸರಗಳ ನಾಳೀವಿನಿಸ್ಸೃತ ರುಧಿರ ಬಂಧಗಳ
ಮಿಸುಪ ಮೊಳೆಗಳ ಮುರಿವುಗಳ ನೆಣ
ವಸೆಯ ತೊರಳೆಯ ತೊಂಗಲಿನೊಳಂ
ದೆಸೆವ ಚಕ್ರವ ನೋಡಿದನು ದೈತ್ಯಾರಿ ಕೋಪದಲಿ ೩೨

ಹರಿದು ಹಬ್ಬುವ ಬಳ್ಳಿವೆಳಗಿನ
ಮುರಿವು ಮಂಡಳಿಸಿದುದು ಶತ ಸಾ
ವಿರ ದಿವಾಕರ ಬಿಂಬವೆಸೆದುದು ಝಳದ ಹೊಯಿಲಿನಲಿ
ಸುರ ನರೋರಗ ಜಗದ ಕಂಗಳ
ತೆರಹು ಕೆತ್ತವು ಬತ್ತಿದುದಧಿಯೊ
ಳುರಿಮಣಲು ಮಾಣಿಕವ ಹುರಿದುದು ಚಕ್ರದೂಷ್ಮೆಯಲಿ ೩೩

ನರನ ತೇರಿನ ಕುದುರೆಗಳು ಡಾ
ವರಿಸಿದವು ಡಗೆ ಹೊಯ್ದು ಮಿಗೆ ದ
ಳ್ಳುರಿಯ ಸಸಿಯಂತಾದನರ್ಜುನದೇವ ನಿಮಿಷದಲಿ
ಕರಗಿ ಕೊರಗಿತು ಲೋಕ ಕೌರವ
ಧರಣಿಪಾಲರಿದೆತ್ತಣುರಿಯೋ
ಹರನ ಕಣ್ಗಿಚ್ಚಲ್ಲಲೇ ಹಾಯೆನುತ ಹಲುಬಿದರು ೩೪

ತುಡುಕಿದನು ಚಕ್ರವನು ರಥದಿಂ
ಪೊಡವಿಯೊಳು ದುಮ್ಮಿಕ್ಕಿದನು ಹ
ತ್ತಡವ ಹಾಯಿಕಿ ಹರಿದನೊಡಬಿದ್ದವರನೊಡೆ ತುಳಿದು
ಸುಡುವೆನಹಿತಾನ್ವಯವ ಭೀಷ್ಮನ
ಕಡಿದು ಭೂತಗಣಕ್ಕೆ ಬೋನವ
ಬಡಿಸುವೆನು ನೋಡಿಲ್ಲಿ ಮೇಳವೆಯೆನುತ ಸೈವರಿದ ೩೫

ಶಿವಶಿವೆಂದುದು ನಿಖಿಳ ಜಗ ಕೌ
ರವರು ಕಂಪಿಸಿ ಥಟ್ಟುಗೆಡೆದರು
ಭುವನದಲಿ ಭಾರಿಸಿತು ಜಯಜಯ ಜಯಮಹಾಧ್ವಾನ
ತವತವಗೆ ತಳ್ಳಂಕದಲಿ ಪಾಂ
ಡವರು ನಡುಗಿತು ಪಾರ್ಥ ಬಲುಗರ
ವವಚಿದಂತಿರೆ ಮೂಕನಾದನು ಬೆರಳ ಮೂಗಿನಲಿ ೩೬

ಹರಿ ಮುಕುಂದ ಮುಕುಂದ ಲಕ್ಷ್ಮೀ
ವರ ನೃಕೇಸರಿಯೆನುತ ಚಾಪವ
ಶರವನವನಿಗೆ ಬಿಸುಟು ಮೈಯಿಕ್ಕಿದನು ಕಲಿ ಭೀಷ್ಮ
ಕರಯುಗವ ಮುಗಿದೆದ್ದು ಮುರಹರ
ಸರಸಿಜಾಂಬಕ ರಾಮ ರಕ್ಷಿಸು
ತರಳನಲಿ ಗುಣದೋಷದರಕೆಯೆ ದೇವ ಹೇಳೆಂದ ೩೭

ದೇವ ನಿಮ್ಮಯ ಖ್ಯಾತಿ ಪರಿಯಂ
ತಾವು ಲಕ್ಷ್ಯವೆ ಜೀಯ ನೊರಜಿನ
ದೇವಗಿರಿಯಂತರವೆ ಸಂಭಾವನೆಯೆ ನನ್ನೊಡನೆ
ದೇವಮುನಿಗಳ ನಗೆಯ ನೋಡದಿ
ದಾವುದುಚಿತವ ಮಾಡಿದಿರಿ ಮಹಿ
ಮಾವಲಂಬವ ಮೆರೆದುದಕೆ ನಗೆ ಬಂದುದೆನಗೆಂದ ೩೮

ಅಲಸಿಕೆಯೊಳೈನೂರು ಸಾವಿರ
ನಳಿನಭವರಡೆಗೆಡೆವರೆಂಬ
ಗ್ಗಳಿಕೆಯೆತ್ತಲು ಹುಲುಮನುಜ ನಾನೆತ್ತಲಿದಿರಾಗಿ
ಮುಳಿದು ಹರಿತಹುದೆತ್ತಲಿದು ನಿ
ನ್ನಳತೆಗೈದುವುದಲ್ಲ ಲಜ್ಜೆಗೆ
ನೆಲೆಯ ಮಾಡಿದೆ ಹೂಡಿದೈ ದುರಿಯುಶವನೆನಗೆಂದ ೩೯

ರೋಮ ರೋಮದೊಳಖಿಲ ಭುವನ
ಸ್ತೋಮ ನಲಿದಾಡುವುದು ಗಡ ನಿ
ಸ್ಸೀಮುತನ ಗಡ ನಾವು ವೈರಿಗಳೆಂದು ಕೋಪಿಸುವ
ಈ ಮರುಳುತನವೆತ್ತಲೀ ರಣ
ತಾಮಸಿಕೆ ತಾನೆತ್ತಣದು ರಘು
ರಾಮ ರಕ್ಷಿಸು ಬಯಲಿನಾಡಂಬರವಿದೇನೆಂದ ೪೦

ನೀನು ಖತಿಯನು ಹಿಡಿಯೆ ನಿನ್ನ ಸ
ಘಾನತನವನು ಬಲ್ಲೆ ಯೋಗಿಗ
ಳೇನನೆಂಬರು ತಮ್ಮೊಳಗೆ ಕೈಹೊಯ್ದು ಮಿಗೆ ನಗುತ
ಮಾನವರು ಕಡುಮೂರ್ಖರೆಂದೇ
ಮಾನಗರ್ವವ ತಳೆದ ಸಾಕಿ
ನ್ನೇನ ಹೇಳುವೆ ನಿನ್ನ ಠಕ್ಕನು ಬಲ್ಲೆ ಹೋಗೆಂದ ೪೧

ಶತ ಪಿತಾಮಹರಡಗರೇ ನೀ
ಮತಿ ಮುರಿಯೆ ಮೇಣ್ ಭ್ರೂವಿಲಾಸ
ಸ್ಥಿತಿಯೊಳೇನುತ್ಪತ್ತಿಯಾಗದೆ ಬ್ರಹ್ಮಕೋಟಿಗಳು
ಅತಿಶಯದ ಮಹಿಮಾಸ್ಪದನು ನೀ
ನತಿಗಹನನೆಂಬಗ್ಗಳಿಕೆಗಿದು
ಕೃತಕವಲ್ಲಾ ದೇವ ಹೇಳೆನ್ನಾಣೆ ಹೇಳೆಂದ ೪೨

ದೇವ ನೀ ದಿಟ ಕೊಲುವಡೆಯು ನಾ
ಸಾವೆನೇ ತಾನಾವನೆಂಬುದ
ದೇವರರಿಯಿರಲೈ ವೃಥಾ ಸಂಭಿನ್ನ ರೋಷದಲಿ
ದೇವನಾಮದ ಜೋಡು ನಮ್ಮನು
ಕಾವುದೈ ನೀ ಮುನಿದಡೆಯು ನಿಮ
ಗಾವು ಹೆದರೆವು ನಾಮಧಾರಿಗಳತುಳ ಬಲರೆಂದ ೪೩

ಭಂಗವಲ್ಲಿದು ನಿನ್ನ ಘನತೆಗೆ
ಡಿಂಗರಿಗರೇ ಮಿಗಿಲು ನಿನಗೆಯು
ಡಿಂಗರಿಗರೇ ಬಲ್ಲಿದರು ದಾಕ್ಷಿಣ್ಯವೇನಿದಕೆ
ಮಂಗಳಾತ್ಮಕ ಕೇಳು ನಿನ್ನಯ
ಹಂಗನೊಲ್ಲೆನು ಮುಕುತಿ ಪಥದೊಳ
ಭಂಗಪೆಂಡೆಯದಾಳಲೈ ನಿಮ್ಮಡಿಯ ಸಿರಿನಾಮ ೪೪

ಕಳುಹಿ ಕಳೆದವು ಖ್ಯಾತಿಯನು ನೀ
ನುಳುಹಿಕೊಂಬುದು ತೇಜವನು ದಿಟ
ಕೊಲುವ ಮನವೇ ಬಿಸುಡು ಚಕ್ರವನೆನ್ನ ಕಾಯದಲಿ
ಅಳುಕಿ ಕೂದಲು ಹರಿದುದಾದರೆ
ಬಳಿಕ ನಾ ಡಿಂಗರಿಗನಲ್ಲೀ
ಕಳಕಳಕೆ ನಾನಂಜುವವನೇ ದೇವ ಮರಳೆಂದ ೪೫

ನಚ್ಚಿದಾಳಿನ ಬಿನ್ನಹಕೆ ಹರಿ
ಮೆಚ್ಚಿ ಮನದಲಿ ನಾಚಿ ಚಕ್ರವ
ಮುಚ್ಚಿದನು ಮುರಿದನು ಕಿರೀಟಿಯ ರಥದ ಹೊರೆಗಾಗಿ
ಬೆಚ್ಚಿ ಬೆದರುವ ಸೇನೆಗಭಯವ
ಹಚ್ಚಿಕೊಟ್ಟನು ವೀರಭೀಷ್ಮನ
ನಿಚ್ಚಟದ ಭಕ್ತಿಯನು ನೆನೆನೆನೆದೊಲೆದ ಹರಿ ಶಿರವ ೪೬

ಹೋದುದೊಂದಪಮೃತ್ಯು ಲೋಕಕೆ
ಶೀದುದಿಲ್ಲಾಯುಷ್ಯ ಮಹದಪ
ವಾದ ದೇವಂಗಾಗಿ ತಪ್ಪಿತು ಮುಚ್ಚು ಮರೆಯೇಕೆ
ಕಾದುಕೊಂಡನು ಭೀಷ್ಮನೀ ಕಮ
ಲೋದರನ ಕೆರಳಿಚಿಯು ಭಕುತಿಯ
ಲಾದರಿಸಿದನು ಪುಣ್ಯವೆಂದನು ಕಮಲಭವ ನಗುತ ೪೭

ನಡುಗುವರ್ಜುನದೇವನನು ತೆಗೆ
ದಡಿಗಡಿಗೆ ತಕ್ಕೈಸಿ ಭೀತಿಯ
ಬಿಡಿಸಿ ವಾಘೆಯ ಕೊಂಡು ತುರಗವನೆಡಬಲಕೆ ತಿರುಹಿ
ನಡಸಿದನು ಕಾಳೆಗಕೆ ಬಳಿಕವ
ಗಡ ಮುರಾಂತಕ ಮರಳಿ ಚಕ್ರವ
ತುಡುಕದಿರನೆಂದಸ್ತಗಿರಿಯನು ಸೂರ್ಯ ಮರೆಗೊಂಡ ೪೮

ಏಳನೆಯ ಸಂಧಿ

ಸೂ. ರಾಯಕಟಕದೊಳಿರುಳು ಭೀಷ್ಮರ
ಸಾಯಬೇಕೆಂದೊಡಬಡಿಸಿ ಕಮ
ಲಾಯತಾಂಬಕ ಸಹಿತ ಪಾಳಯಕರಸನೈತಂದ

ಕೇಳು ಜನಮೇಜಯ ಧರಿತ್ರೀ
ಪಾಲ ದಿನ ಮೂರಾಯ್ತು ಭೀಷ್ಮನ
ಕಾಳೆಗದೊಳಲ್ಲಿಂದ ಮೇಲಣ ಕಥನಕೌತುಕವ
ಆಲಿಸುವದೈ ಮೂಡಣದ್ರಿಯ
ಮೇಲೆ ಕೆಂಪೆಸೆಯಿತ್ತು ಘನ ನಿ
ಸ್ಸಾಳವೊದರಿದವೈ ನೃಪಾಲರ ಕಟಕವೆರಡರಲಿ ೧

ಹಲ್ಲಣಿಸಿ ಹರಿತಂದು ಮೋಹರ
ವಲ್ಲಿಗಲ್ಲಿಗೆ ನಿಂದುದೆರಡರ
ಘಲ್ಲಣೆಯ ಘಾಯದ ಘಡಾವಣೆ ಮೀರಿ ಘಾತಿಸಿತು
ಕೆಲ್ಲಗೆಡೆದವು ಕರಿಗಳಸುಗಳ
ಚೆಲ್ಲಿದವು ತೇಜಿಗಳು ರಥಕುಳ
ವೆಲ್ಲ ಹುಡಿಹುಡಿ ಪಾಯದಳ ನಿರ್ನಾಮವಾಯ್ತೆಂದ ೨

ಅಳಿದುದಾ ದಿವಸದಲಿ ಪಾಂಡವ
ಬಳದೊಳಗಣಿತ ಸೇನೆ ಭೀಷ್ಮನು
ಫಲುಗುಣನು ಕಾದಿದರು ದಿನಕರನಪರಜಲನಿಧಿಗೆ
ಇಳಿಯೆ ತೆಗೆದವು ಬಲವೆರಡು ಮೂ
ಡಲು ಮಗುಳೆ ಕೆಂಪೇರೆ ಕದನಕೆ
ಕಳನ ತುಂಬಿತು ಮತ್ತೆ ಕೌರವ ಪಾಂಡವರ ಸೇನೆ ೩

ಬಿದ್ದುದಗಣಿತ ಸೇನೆ ಪಡುವಲು
ಹೊದ್ದಿದನು ರವಿ ಮತ್ತೆ ಮೂಡಣ
ಗದ್ದುಗೆಯ ವೆಂಠಣಿಸಿದನು ಕುಮುದಾಳಿ ಕಂಠಣಿಸೆ
ಎದ್ದುದದ್ಭುತ ರಣ ಕೃತಾಂತಗೆ
ಬಿದ್ದನಿಕ್ಕಿದನದಟನಬುಧಿ
ಅದ್ದ ಸೂರ್ಯನ ಬಿಂಬವೆದ್ದುದು ಮೂಡಣದ್ರಿಯಲಿ ೪

ಏಳನೆಯ ದಿವಸದ ಮಹಾರಥ
ರೂಳಿಗವು ಹಿರಿದಾಯ್ತು ಕುರು ಭೂ
ಪಾಲಕನ ತಮ್ಮಂದಿರಳಿದುದು ದಿವಸವೆಂಟರಲಿ
ಕೋಲ ಮೊನೆಯಲಿ ಕೃಷ್ಣರಾಯನ
ಸೋಲಗಿಸಿ ಮೆಚ್ಚಿಸಿದನಾ ಕ
ಟ್ಟಾಳು ಭೀಷ್ಮನ ದಿವಸವೊಂಬತ್ತಾಯ್ತು ಸಮರದಲಿ ೫

ಇರುಳು ಕೃಷ್ಣನ ಹೊರೆಗೆ ಬಂದನು
ಧರಣಿಪತಿ ದುಗುಡದಲಿ ನಿಜ ಸೋ
ದರರು ಸಹಿತ ಮುರಾರಿಯಂಘ್ರಿಗೆ ನಮಿಸಿ ಕೈಮುಗಿದು
ಸುರನದೀಸುತನಖಿಲ ಸೇನೆಯ
ನೊರಸಿದನು ನಮ್ಮಲ್ಲಿ ಖಾತಿಯ
ಧರಿಸಿದನು ಜಯವಧುವ ವರಿಸಿದ ದೇವ ಕೇಳೆಂದ ೬

ನೆರೆವಣಿಗೆಗುಂದಿತ್ತು ಬಲ ಕೈ
ಮರೆದರದಟರು ಬಿರುದ ಭಟರಿಗೆ
ಬೆರಗು ಬಲಿದುದು ಹೂಣೆಗರ ಹೋರಟೆಗಳಳುಕಿದವು
ನೆರೆ ಸುಗಿದ ಹುಲಿಯಂತೆ ಬರಿಕೈ
ಮುರಿದ ಮದಗಜದಂತೆ ಚಿತ್ರದ
ಉರುವ ಕೇಸರಿಯಂತೆ ಮರೆದಿದೆ ನಮ್ಮ ಬಲವೆಂದ ೭

ಹಾರಿದವು ಹೆಸರುಗಳು ಭಂಗದ
ಸೂರೆಗಳ ಕಟ್ಟಿದರು ಮಿಗೆ ತಲೆ
ಮಾರಿಗಳು ಮರಳಿದರು ರಣಹೇಡಿಗಳ ಬಗೆಯಂತೆ
ದೂರಲರಿಯೆನು ಸುಭಟರಿಗೆ ಮನ
ಬೇರೆ ನುಡಿ ಬೇರಾಯ್ತು ಸಮರದೊ
ಳೇರತಿಂಗುರಿದಿಂದು ದಣಿದುದು ನಮ್ಮ ಬಲವೆಂದ ೮

ಚಳಶಿಳೀಮುಖರವಕೆ ಪಟು ಭಟ
ರಳುಕಿದರು ವಿರಹಿಗಳವೊಲು ಸ
ಮ್ಮಿಳಿತ ಶಾಸ್ತ್ರಧ್ವನಿಗೆ ಸೆಡೆದರು ಮೂರ್ಖರಂದದಲಿ
ಕಲಿತ ಬಲ ಶತಕೋಟಿಗಿದಿರಾ
ಗಳಿದವದ್ರಿಗಳಂತೆ ಹರಿಪದ
ವಳಯ ವಿದಳಿತವಾಯ್ತು ಮೇಘವ್ರಾತದಂದದಲಿ ೯

ರಣ ರಹಸ್ಯ ಜ್ಞಾನಿಗಳು ಮಿಗೆ
ಮಣಿದರಿಂದ್ರಿಯವಶಕೆ ರಿಪುಭಟ
ಗಣವಿದಾರಣ ತರ್ಕ ವಿದ್ಯಾವೀತರಾಗಿಗಳು
ಸೆಣಸಿನಲಿ ಸಮದರ್ಶಿಗಳು ಧಾ
ರಣಿಯ ಪತಿಗಳು ರಾಜಸೇವಾ
ಪ್ರಣಯಮೀಮಾಂಸಾದಿ ಮೂಢರು ನಮ್ಮ ಭಟರೆಂದ ೧೦

ಹರಿದುದಿಂದಿನ ದಿನಕೆ ಶತ ಸಾ
ವಿರ ಮಹೀಶರು ಯಮನ ನಗರಿಗೆ
ಸರಿದುದುಳಿದರ ದಿಟ್ಟತನ ಗಾಂಗೇಯನುಪಟಳಕೆ
ಅರಿಪಯೋನಿಧಿ ಬಡಬನನು ಗೆಲ
ಲರಿದು ಜೀಯ ಮುಕುಂದ ನೀನೇ
ಕರುಣಿಸೈ ವನವಾಸವೋ ನಮಗೇನು ಗತಿಯೆಂದ ೧೧

ಮುಗುಳುನಗೆ ನಸು ಮೊಳೆಯೆ ಭೀಮಾ
ದಿಗಳಿಗೆಂದನು ಕೃಷ್ಣನರಸಗೆ
ಸೊಗಸು ಬನದಲಿ ಬರಿಯ ಮನವೀ ಕದನಕೇಳಿಯಲಿ
ವಿಗಡತನವಂತಿರಲಿ ಭೀಷ್ಮನ
ಬೆಗಡುಗೊಳಿಸಲು ಹರನ ಹವಣ
ಲ್ಲಗಣಿತನ ಸಾಮದಲಿ ಮುರಿಯಲುಬೇಕು ನಾವೆಂದ ೧೨

ದಂಡನಯ ತರುಬಿದರೆ ಗುಣದಲಿ
ಖಂಡಿಸುವುದಿದಿರಾದ ತರುಗಳು
ದಿಂಡುಗೆಡೆವವು ತೊರೆಗೆ ಮಣಿದರೆ ಗೇಕು ಬದುಕುವುದು
ಚಂಡಬಲನೀ ಭೀಷ್ಮ ಮುಳಿದರೆ
ಖಂಡಪರಶುವ ಗಣಿಸನೆನೆ ಖರ
ದಂಡನಾಭನ ಮತಕೆ ನೃಪತಿ ಹಸಾದವೆನುತಿರ್ದ ೧೩

ಇರುಳು ಗುಪಿತದಲವನಿಪತಿ ಸೋ
ದರರು ಮುರರಿಪು ಸಹಿತ ಬಂದನು
ಸುರನದೀನಂದನನ ಮಂದಿರಕಾಗಿ ವಹಿಲದಲಿ
ಕರೆದು ಪಡಿಹಾರರಿಗೆ ಬಂದುದ
ನರುಹಲವದಿರು ಹೊಕ್ಕು ಸಮಯವ
ನರಿದು ಭೀಷ್ಮಂಗೀ ಹದನ ಬಿನ್ನಹವ ಮಾಡಿದರು ೧೪

ಬಂದನೇ ಧರ್ಮಜನು ಮುರರಿಪು
ತಂದನೇ ಕೌರವರನಕಟಾ
ಕೊಂದನೇ ಶಿವಶಿವಯೆನುತ ಮೌನದಲಿ ಮುಳುಗಿರ್ದ
ಮಂದಿಯನು ಹೊರಗಿರಿಸಿ ಬರ ಹೇ
ಳೆಂದರಾಗಲೆ ಕೃಷ್ಣ ಕೊಂತೀ
ನಂದನರು ಬರಲಿದಿರುವಂದನು ಭೀಷ್ಮ ವಿನಯದಲಿ ೧೫

ಅರಸಿ ಹೊಗಲಾಮ್ನಾಯನಿಕರಕೆ
ತೆರಹುಗುಡದ ಪರಸ್ವರೂಪನು
ಕುರುಹುಗೊಂಡರೆ ಮಂದಿವಾಳವೆ ದೇವ ನೀನೊಲಿದು
ಅರಸಿಕೊಂಡೈತರಲು ತಾನ್ನೈ
ಸರವನಾಗಲಿ ನಿನ್ನ ಭೃತ್ಯನ
ಹೊರೆವ ಪರಿಯಿದು ಕೃಷ್ಣ ಜಯಜಯಯೆನುತ ನಿಡುಗೆಡೆದ ೧೬

ನಗುತ ಹರಿ ಗಂಗಾಕುಮಾರನ
ನೆಗಹಿದನು ಬಳಿಕಿವರು ರತುನಾ
ಳಿಗಳ ಕಾಣಿಕೆಯಿತ್ತು ಮೈಯಿಕ್ಕಿದರು ಭಕುತಿಯಲಿ
ತೆಗೆದು ಬಿಗಿಯಪ್ಪಿದನು ಯಮಜಾ
ದಿಗಳ ಮನ್ನಿಸಿ ವೀಳೆಯವನಿ
ತ್ತೊಗುಮಿಗೆಯ ಹರುಷದಲಿ ಹೊಂಪುಳಿಯೋದನಾ ಭೀಷ್ಮ ೧೭

ಅರಿಯ ಬೀಡಿದು ರಾಯನನುಜರು
ದುರುಳರುಚಿತಾನುಚಿತಗೇಡಿಗ
ಳಿರುಳು ದೊರೆಗಳು ನೀವನಾಲೋಚಿತದಲೈತಹರೆ
ಹರಿಯ ಬಲುಹುಂಟಾದಡೆಯು ಧಿ
ಕ್ಕರಿಸಬಾರದು ರಾಜಮಂತ್ರವ
ನರಸ ಸಾಕಿನ್ನೇನು ಬಂದುದು ಹೇಳು ನೀನೆಂದ ೧೮

ಅರಿಯೆನುಚಿತವನೆಮ್ಮ ಭಾರದ
ಹೊರಿಗೆ ನಿಮ್ಮದು ಕೃಷ್ಣನದು ನಾ
ವರಿದರೆಯು ಮೇಣ್ ಮರೆದರೆಯು ರಕ್ಷಕರು ನೀವೆಮಗೆ
ಅರಿಯನೇನುವನೆಂದು ಸಲಹಲು
ಮರೆವಳೇ ಬಾಲಕನ ತಾಯ್ ನೀ
ನುರುವ ವಜ್ರದ ಜೋಡು ನಮಗಿರೆ ಭೀತಿಯೇಕೆಂದ ೧೯

ಎಮಗೆ ಜಯವೆಂತಹುದು ರಾಜ್ಯ
ಭ್ರಮೆಯ ರಾಜಸಬುದ್ಧಿಗಳು ವಿ
ಕ್ರಮವಿಹೀನರು ನಾವು ನೀವ್ ತ್ರೈಲೋಕ್ಯವಿಜಯಿಗಳು
ಸಮರ ಸೋತುದು ನಮ್ಮ ಸುಭಟರು
ಯಮನ ಸೇವಕರಾಯ್ತು ಕೃಪೆಯಿಂ
ದೆಮಗೆ ನಿಮ್ಮಭಿಮತವ ಬೆಸಸುವುದೆಂದನಾ ಭೂಪ ೨೦

ಆಕೆವಾಳರು ಭೀಮ ಪಾರ್ಥರು
ನೂಕದಾಹವವುಳಿದ ಸೇನಾ
ನೀಕವೇ ನಿಮ್ಮಿಂದ ಸವೆದುದು ಹಲವು ಮಾತೇನು
ಸಾಕುವರೆ ಮೇಣ್ ಮುನಿದು ಕೊಲುವರೆ
ಬೇಕು ಬೇಡೆಂಬವರ ಕಾಣೆನು
ಕಾಕನಾಡೆನು ಬೆಸಸಿ ನಿಮ್ಮಭಿಮತವನೆನಗೆಂದ ೨೧

ತೀದುದೆಮ್ಮಯ ಸೇನೆ ನಸು ಸೊ
ಪ್ಪಾದುದಿಲ್ಲರಿಸೇನೆ ನಿಮ್ಮನು
ಕಾದಿ ಗೆಲುವರೆ ಮೊಲೆಯನೂಡಿದ ತಾಯಿ ಜಾಹ್ನವಿಯೆ
ಕಾದಿದೆವು ಕಟ್ಟಿದೆವು ಗೆಲಿದೆವು
ಮೇದಿನಿಯ ನಾವಿನ್ನು ಮುನ್ನಿನ
ತೀದ ವನವಾಸಕ್ಕೆ ನೇಮವ ಕೊಟ್ಟು ಕಳುಹೆಂದ ೨೨

ಮನ್ನಿಸುವಡೀ ಉಭಯರಾಯರು
ನಿನ್ನ ಮೊಮ್ಮಂದಿರುಗಳದರೊಳು
ನಿನ್ನ ಕುಣಿಕೆಯೊಳಿಹುದು ಕುಂತೀಸುತರ ಜೀವನವು
ನಿನ್ನನೇ ನಂಬಿಹರು ನೀನೇ
ಮುನ್ನ ಶಿಶುತನದಲ್ಲಿ ಸಲಹಿದೆ
ಮನ್ನಣೆಯ ನೀ ಬಲ್ಲೆಯೆಂದನು ದಾನವಧ್ವಂಸಿ ೨೩

ಎನಲು ಮೊಮ್ಮಂದಿರುಗಳಳಲಿನ
ಘನತೆಯನು ಕಿವಿಗೊಟ್ಟು ಕೇಳಿದು
ನನೆದುದಂತಃಕರಣ ಕಂಬನಿದುಂಬಿದನು ಭೀಷ್ಮ
ಎನಗೆ ಕಾಲ ಸಮೀಪ ಮಗನೇ
ನಿನಗೆ ಭಯಬೇಡಿನ್ನು ಕುರುಪತಿ
ದನುಜವೈರಿಗೆ ತಪ್ಪಿದಾಗಳೆ ನಿಮಗೆ ಜಯವೆಂದ ೨೪

ಕೊಂದೆನಗಣಿತ ರಾಯರನು ತಾ
ಮಂದಿಯನು ನಿನಗಾನು ಮುನಿಯೆನು
ಬಂದು ಪಾರ್ಥನ ರಥವ ತಡೆದರೆ ನೀವು ಧೃತಿಗೆಡದೆ
ಇಂದಿನುದಯದಲಾ ಶಿಖಂಡಿಯ
ತಂದು ನಿಲಿಸಿದಡೆನ್ನ ತನುವನು
ಹಿಂಡುಗಳೆಯದೆ ನಿಮಗೆ ತೆರುವೆನು ಮಗನೆ ಕೇಳೆಂದ ೨೫

ಗಂಡುತನ ತಾ ನೆರವು ನಿಮ್ಮ ಶಿ
ಖಂಡಿಯನು ಮುಂದಿರಿಸಲಾತನ
ಕಂಡು ನಾವ್ ಕಾಳೆಗವ ಮಾಡೆವು ಕೈದುಗಳ ಬಿಸುಟು
ಚಂಡಿತನವನು ಮಾದು ಮಿಗೆ ಕೈ
ಕೊಂಡು ಫಲುಗುಣನೆಸಲಿ ತನುವನು
ದಿಂಡುಗೆಡಹಲಿ ಬಳಿಕ ಗೆಲುವಿರಿ ಕೌರವೇಶ್ವರನ ೨೬

ಎನಲು ಶಿವಶಿವ ಶಿವ ಮಹಾದೇ
ವೆನುತ ಕಿವಿಗಳ ಮುಚ್ಚಿದನು ಕಂ
ಬನಿಯನುಂಗುರಲಿ ಮಿಡಿದು ನೊಂದನು ಪಾರ್ಥ ಹೃದಯದಲಿ
ಎನಗೆ ಗೆಲವಾಯ್ತುದು ಕೃತಾರ್ಥರು
ಜನದೊಳೆನ್ನವೊಲಾರು ಬಳಿಕೇ
ನೆನಗೆ ನಿಮ್ಮವೊಲಾರು ಹಗೆಗಳು ಜಗದೊಳುಂಟೆಂದ ೨೭

ಕಳಿದನಡವಿಯೊಳಯ್ಯನಲ್ಲಿಂ
ಬಳಿಕ ಭೀಷ್ಮನ ತೋಳ ತೊಟ್ಟಿಲಿ
ನೊಳಗೆ ಬೆಳೆದವು ಸಲಹಿದನು ಧೂಳಾಟ ಮೊದಲಾಗಿ
ಬಲಿಯಲೆರಕೆಗಳೆಮಗೆ ಭಾಗಿಸಿ
ನೆಲನ ಕೊಟ್ಟನು ಭೀಷ್ಮನೀತನ
ಕೊಲೆಗೆ ಬಯಸುವ ಮನವದೆಂತುಂಟೊ ಕೃಷ್ಣ ಹೇಳೆಂದ ೨೮

ಈತನನು ನಾವ್ ಕೊಲಲು ಭುವನ
ಖ್ಯಾತರಹೆವೈ ಸುಡಲಿ ಬಯಸುವ
ಭೂತಳವನೀ ಬೊಡ್ಡಿಗೋಸುಗ ಸುಟ್ಟು ಸುಕೃತವನು
ಘಾತಕರು ಪಾತಕರು ತೆಗೆ ತೆಗೆ
ಏತರವದಿರು ಪಾಂಡುತನಯರ
ಮಾತನಾಡದಿರೆಂಬ ಕೀರ್ತಿಗೆ ನೋತುದಿಲ್ಲೆಂದ ೨೯

ನಿಲ್ಲು ಫಲುಗುಣ ಕೇಳು ಹೊಲ್ಲೆಹ
ವಲ್ಲ ಸಕಲ ಕ್ಷತ್ರಧರ್ಮವ
ಬಲ್ಲೆ ನೀನೆಮಗಹಿತನೇ ನೃಪನೀತಿಬಾಹಿರನೆ
ಎಲ್ಲಿಯಪಕೀರ್ತಿಗಳು ಕೀರ್ತಿಗ
ಳೆಲ್ಲ ವಿಧಿಯವು ನಿನ್ನ ಕಾರಣ
ವಲ್ಲ ನೀ ಕೊಲಲೈಸರವನೈ ಪಾರ್ಥ ಹೇಳೆಂದ ೩೦

ಯಂತ್ರಿ ಮಿಡಿದರೆ ಕಾದಿ ಬೀಳ್ವವು
ಯಂತ್ರಮಯ ಹಾಹೆಗಳು ವಧೆಯಾ
ಯಂತ್ರಿಗೋ ಹಾಹೆಗಳಿಗೊ ಹೇಳಾರ ನೆಮ್ಮುವದು
ಯಂತ್ರಿ ಕೃಷ್ಣನು ನಾವು ನೀವೀ
ತಂತ್ರವಖಿಲ ಚರಾಚರಂಗಳು
ಯಂತ್ರರೂಪುಗಳೆಲ್ಲ ಕಾರಣವಿಲ್ಲ ನಿನಗೆಂದ ೩೧

ಒಂದು ಮುಖದಲಿ ಜಗವ ಹೂಡುವ
ನೊಂದು ಮುಖದಲಿ ಜಗವ ಸಲಹುವ
ನೊಂದು ಮುಖದಲಿ ಬೇಳುವನು ನಯನಾಗ್ನಿಯಲಿ ಜಗವ
ಕೊಂದು ಹಗೆಯಲ್ಲೀತ ಸಲಹಿದ
ನೆಂದು ಮೋಹಿತನಲ್ಲ ಪರಮಾ
ನಂದಮಯ ಹರಿಯಿದಕೆ ಕಾರಣವಿಲ್ಲ ನಿನಗೆಂದ ೩೨

ಕಾವುದೀತನ ಕರುಣ ಮುನಿದರೆ
ಸಾವೆನೀತನ ಕಯ್ಯ ಬಾಯಲಿ
ನೀವು ತಾವ್ ನೆರೆ ಮತ್ತೆ ಕೆಲಬರು ಮುನಿದಡಂಜುವೆನು
ನಾವು ಬೆಸಸಿದ ಮಾಡಿ ಸಾಕಿ
ನ್ನಾವಭಯ ನಿಮಗಿಲ್ಲ ಚಿತ್ತದ
ಭಾವಶುದ್ಧಿಯಲೆಮ್ಮ ನಂಬಿರಿ ಹೋಗಿ ನೀವೆಂದ ೩೩

ಹರುಷ ಬಲಿದುದು ಮನದ ಸಂಶಯ
ಹರೆದುದಾಹವ ವಿಜಯವಾರ್ತೆಯ
ಹರಹಿನಲಿ ಹೊರೆಯೇರಿ ಹೋಂಪುಳಿಯೋದರಡಿಗಡಿಗೆ
ಸುರನದೀನಂದನನ ಹರಹಿನ
ಹರಕೆಗಳ ಕೈಕೊಂಡು ಬೀಳ್ಕೊಂ
ಡರಸ ಮುರರಿಪು ಸಹಿತ ಬಂದನು ತನ್ನ ಪಾಳಯಕೆ ೩೪

ಎಂಟನೆಯ ಸಂಧಿ

ಸೂ. ಬೆಗಡುಗೊಂಡುದು ದ್ರೋಣ ಶಲ್ಯಾ
ದಿಗಳು ಪಾರ್ಥನ ವಿಕ್ರಮಾನಲ
ಮೊಗೆದು ಸುರಿದುದು ಸಕಲ ಕೌರವಸೈನ್ಯ ಸಾಗರವ

ಸೂಳು ಮಿಂಗಲಳ್ಳಿರಿದವುರು ನಿ
ಸ್ಸಾಳತತಿ ಮುಂಜಾವದಲಿ ಹೆ
ಗ್ಗಾಳೆ ಮೊರೆದವು ಕುಣಿದು ಗಜರಿದವಾನೆ ಕುದುರೆಗಳು
ತೂಳುವರೆಗಳ ಭಟರ ಘೋಳಾ
ಘೋಳಿ ದೆಸೆಗಳ ಬಗಿಯೆ ಮೂಡಣ
ಶೈಲಮಂಚದಲುಪ್ಪವಡಿಸಿದನಬುಜಿನೀರಮಣ ೧

ಲಳಿ ಮಸಗಿ ಹನುಮಿಸುತ ಖುರದಲಿ
ನೆಲನ ಕೆರೆದವು ಕುದುರೆ ಬರಿಕೈ
ಯೊಲೆದು ಕಂಭವ ಕೊಂಡು ಮಿಕ್ಕವು ಸೊಕ್ಕಿದಾನೆಗಳು
ಹೊಳೆಹೊಳೆದು ಹೊಂದೇರು ಹರಿದವು
ತಳಪಟಕೆ ಹೊದರೆದ್ದು ಗಗನದ
ಹೊಲಿಗೆ ಬಿಡೆ ಬೊಬ್ಬಿರಿದು ಕವಿದುದು ವಿಗಡ ಪಾಯದಳ ೨

ಲಲಿತ ಮಂಗಳ ಪಾಠಕರ ಕಳ
ಕಳಿಕೆಗುಪ್ಪವಡಿಸಿದನವನಿಪ
ತಿಲಕನನುಜರು ಸಹಿತ ವೈದಿಕ ಕ್ರಿಯೆಯನನುಕರಿಸಿ
ನಳಿನನಾಭನ ಮಧುರವಾಣೀ
ಲುಳಿತ ಪರಮಾಶೀರ್ವಚನ ಪರಿ
ಕಲಿತ ಕವಚಿತಕಾಯ ಪಾಂಡವರಾಯ ಹೊರವಂಟ ೩

ಗಗನ ಸರಸಿಯು ಪುಂಡರೀಕಾ
ಳಿಗಳೊ ಧವಳಚ್ಛತ್ರ ಪಂಕ್ತಿಯೊ
ಗಗನ ಗಂಗೆಯು ಬಹಳ ಕಾಲುವೆಗಳೊ ಪತಾಕೆಗಳೊ
ಗಗನ ಕುಂಭಿಯು ಗುಳದ ಕೆಲ ಚೌ
ರಿಗಳೊ ಸೀಗುರಿಗಳೊ ಕೃಪಾಣವೊ
ಗಗನ ಪೀವರ ತಾಳಪತ್ರಾವಳಿಯೊ ಹೊಸತಾಯ್ತು ೪

ಉಬ್ಬಿದವು ಬೊಬ್ಬೆಗಳು ಬಿಲುದನಿ
ಗ್ಗಬರಿಸಿದವು ನಭವ ಗಜ ಹಯ
ದಬ್ಬರಣೆ ಗರುವಾಯಿಗೆಡಿಸಿತು ಸಿಡಿಲ ಸಡಗರವ
ಕೊಬ್ಬಿ ಹರಿದುದು ವಿವಿಧ ವಾದ್ಯದ
ನಿಬ್ಬರದ ನಿಡುದನಿಯು ಜಲನಿಧಿ
ಗಬ್ಬವಿಕ್ಕಿತು ಸೈನ್ಯಜಲಧಿಯ ಬಹಳ ಗರ್ಜನೆಗೆ ೫

ಕುಣಿದು ಮುಂಚಿತು ಚೂಣಿ ಸಮರಾಂ
ಗಣದ ಕೇಳೀ ಬಾಲಕರು ಸಂ
ದಣಿಸಿ ಹೊಕ್ಕರು ಜಯವಧೂಟೀವಿರಹ ಕಾತರರು
ಗಣನೆಯಿಲ್ಲದ ಗಜಹಯದ ಭಾ
ರಣೆಯ ಭಾರಿಯ ಭಟರೊಡನೆ ಥ
ಟ್ಟಣೆಯ ಮೇಲೆ ಮಹೀಶ ಹೊಕ್ಕನು ಕಾಳೆಗದ ಕಳನ ೬

ಉದಯವಾಗದ ಮುನ್ನ ಕಳನೊಳು
ಹೊದರುಗಟ್ಟಿದ ವೈರಿಸೇನೆಯ
ಹದನಿವರ ಪಾಳಯಕೆ ಬಂದುದು ದಳದ ಕಳಕಳಿಕೆ
ಸದೆದುದನಿಬರ ಕಿವಿಯೊಡನೆ ತುಂ
ಬಿದವು ನಿಸ್ಸಾಳೌಘ ದಿಕ್ಕಿನ
ತುದಿಯ ತಿವಿದವು ಮಾರಿ ಗಳಹುವ ಗೌರುಗಹಳೆಗಳು ೭

ಅರಸನುಪ್ಪವಡಿಸಿದನವನೀ
ಶ್ವರ ವಿಹಿತ ಸಂಧ್ಯಾಭಿವಂದನ
ವರಮಹೀಸುರವರ್ಗ ಸತ್ಕಾರವನು ನೆರೆ ಮಾಡಿ
ಸುರನದೀಜನ ಮನೆಗೆ ಬರಲಂ
ದಿರುಳ ಕಡೆಯಲಿ ನೃಪತಿಗಾ ವಿ
ಸ್ತರವ ವಿರಚಿಸಿ ಜೋಡ ತೊಟ್ಟನು ರಥದಿ ಮಂಡಿಸಿದ ೮

ಇಂದಲೇ ಪಾಂಡವರ ಚಿತ್ತಾ
ನಂದಚಿತ್ರಕೆ ಧೂಮದರುಶನ
ವಿಂದಲೇ ಕೌಂತೇಯರಿಗೆ ಸುರಪುರದ ವೈಹಾಳಿ
ಇಂದಲೇ ಪವನಜನ ಪಾರ್ಥನ
ಸಂದ ವಿಕ್ರಮವಿಷಕೆ ಗಾರುಡ
ವೆಂದೆನುತ ಬೊಬ್ಬಿರಿದು ಕವಿದುದು ಸಕಲ ಕುರುಸೇನೆ ೯

ತರುಣ ರವಿಗಳ ತತ್ತಿಗಳ ಸಂ
ವರಿಸದಿರರೆನೆ ಮಾಣಿಕಂಗಳ
ತರತರದ ಕೀಲಣೆಯ ಹೊಂಗೆಲಸದ ಸುರೇಖೆಗಳ
ಕೊರಳ ಹೀರಾವಳಿಯ ರಶ್ಮಿಯ
ಹೊರಳಿಗಳ ಹೊದಕೆಗಳ ಕವಚದ
ಲರಿದಿಶಾಪಟ ಭೀಷ್ಮನೆಸೆದನು ರಥದ ಮಧ್ಯದಲಿ ೧೦

ವೀರ ಸೇನಾಪತಿಯ ಸನ್ನೆಗೆ
ಭೂರಿಬಲ ಹಬ್ಬಿದುದು ದಿಕ್ಕಿಗ
ಳೋರೆ ಓಗ್ಗಿದವಮಮ ತಗ್ಗಿದರಹಿಪ ಕೂರುಮರು
ಚಾರು ಚಾಮರ ಸಿಂಧ ಸತ್ತಿಗೆ
ಯೋರಣದ ಕಲ್ಪಾಂತ ಮೇಘದ
ಭಾರಣೆಯನೊಟ್ಟೈಸಿ ಥಟ್ಟಯಿಸಿತ್ತು ಕುರುಸೇನೆ ೧೧

ಭುವನಗರ್ಭಿತವಾದುದಾ ಮಾ
ಧವನ ಜಠರದವೋಲು ವರ ಭಾ
ಗವತನಂತಿರೆ ವಿಷ್ಣುಪದ ಸಂಸಕ್ತ ತನುವಾಯ್ತು
ರವಿಯವೊಲು ಶತಪತ್ರ ಸಂಘಾ
ತವನು ಪಾದದಲಣೆದು ಕೆಂಧೂ
ಳವಗಡಿಸೆ ಕುರುಸೇನೆ ಕೈಕೊಂಡುದು ರಣಾಂಗಣವ ೧೨

ಹೊಗರೊಗುವ ಝಳಪಿಸುವಡಾಯುಧ
ನೆಗಹಿ ತೂಗುವ ಲೌಡಿಗಳ ಮೊನೆ
ಝುಗಝುಗಿಸಿ ಝಾಡಿಸುವ ಸಬಳದ ತಿರುಹುವಂಕುಶದ
ಬಿಗಿದುಗಿವ ಬಿಲ್ಲುಗಳ ಬೆರಳೊಳ
ಗೊಗೆವ ಕೂರಂಬುಗಳ ಸುಭಟಾ
ಳಿಗಳೊಡನೆ ಗಾಂಗೇಯ ಹೊಕ್ಕನು ಕಾಳೆಗದ ಕಳನ ೧೩

ವಿತತ ವಾಜಿವ್ರಜದ ಘನ ಹೇ
ಷಿತದ ಘಲ್ಲಣೆ ಗಜದಳದ ಬೃಂ
ಹಿತದ ಬಹಳಿಕೆ ರಥಚಯದ ಚೀತ್ಕೃತಿಯ ಚಪ್ಪರಣೆ
ನುತ ಪದಾತಿಯ ಗರ್ಜನೆ ಸಮು
ದ್ಧತ ಧನುಷ್ಟಂಕಾರ ರೌದ್ರಾ
ಯತ ಭಡಾಳಿಸಲೊಡ್ಡಿದರು ಮಂಡಳಿಸಿ ಮೋಹರವ ೧೪

ಚೂಣಿ ತಲೆಯೊತ್ತಿದುದು ಹರಣದ
ವಾಣಿ ಕೇಣಿಯ ಕುಹಕವಿಲ್ಲದೆ
ಗೋಣುಮಾರಿಗಳೋಲಗದ ಹಣರುಣವ ನೀಗಿದರು
ಹೂಣಿಗರು ಹುರಿಬಲಿದು ಹಾಣಾ
ಹಾಣಿಯಲಿ ಹೊಯ್ದಾಡಿದರು ಘನ [೧೫
ಶೋಣಸಲಿಲದ ಹೊನಲು ಹೊಯ್ದುದು ಹೊಗುವ ಬವರಿಗರ

ಕೋಡಕೈಗಳ ಭಟರಲಲಗೆಡೆ
ಯಾಡಿದವು ಹೆಗಲಡ್ಡವರಿಗೆಯ
ನೀಡಿ ಮೈಮಣಿದೌಕಿ ತಿವಿದಾಡಿದರು ಸಬಳಿಗರು
ಕೂಡೆ ತಲೆವರಿಗೆಗಳಲುರೆ ಕೈ
ಮಾಡಿದರು ಖಡ್ಗಿಗಳು ಥಟ್ಟಿನ
ಜೋಡು ಜರಿಯಲು ಬೆರಸಿದವಾನೆ ಕುದುರೆಗಳು ೧೬

ಪಿರಿದು ಮೊನೆಗುತ್ತಿನಲಿ ನೆತ್ತರು
ಸುರಿದುದಡಹೊಯ್ಲಿನಲಿ ಖಂಡದ
ಹೊರಳಿ ತಳಿತುದು ಕಾಯವಜಿಗಿಜಿಯಾಯ್ತು ಲೌಡಿಯಲಿ
ಸರಳ ಚೌಧಾರೆಯಲಿ ಹಾಯ್ದವು
ಕರುಳು ಕಬ್ಬಿನ ಕೋಲಿನಲಿ ಕ
ತ್ತರಿಸಿದವು ಕಾಲುಗಳು ಕೌತುಕವಾಯ್ತು ಚತುರಂಗ ೧೭

ಕಡಿದು ಚಿಮ್ಮಿದ ಬೆರಳುಗಳ ಹಿ
ಮ್ಮಡಿಯ ಘಾಯದ ನಾಳ ಹರಿದರೆ
ಮಡಿದ ಗೋಣಿನ ಬೆಸುಗೆ ಬಿರಿದ ಕಪಾಲದೋಡುಗಳ
ಉಡಿದ ತೊಡೆಗಳ ಹರಿದ ಹೊಟ್ಟೆಯ
ಹೊಡೆ ಮರಳಿದಾಲಿಗಳ ತೋಳಿನ
ಕಡಿಕುಗಳ ರಣಮಹಿ ಭಯಾನಕ ರಸಕೆ ಗುರಿಯಾಯ್ತು ೧೮

ಕೊರಳ ತೆತ್ತುದು ಚೂಣಿದಳ ಮು
ಖ್ಯರಿಗೆ ಹೇಳಿಕೆಯಾಯ್ತು ಮೋಹರ
ಪೆರಡರಲಿ ಮೊನೆಯುಳ್ಳ ನಾಯಕವಾಡಿ ನಲವಿನಲಿ
ಕರಿ ತುರಗ ರಥ ಪಾಯದಳದಲಿ
ಹೊರಳಿ ತಗ್ಗಿತು ರಥದ ಲಗ್ಗೆಯ
ಧರಧುರದ ದೆಖ್ಖಾಳ ಮಿಗೆ ನೂಕಿದರು ಸಂಗರಕೆ ೧೯

ತಳಿತ ಸತ್ತಿಗೆಗಳ ಪತಾಕಾ
ವಳಿಯ ಪಡಪಿನ ಬಿರುದಿನುಬ್ಬಟೆ
ಗಳ ವಿಡಾಯಿಯ ಸಿಂಧ ಸೆಳೆ ಸೀಗುರಿಯ ಸುಳಿವುಗಳ
ಕಳಕಳಿಕೆ ಕಡುಹೇರಿ ತಳ ಪಟ
ದೊಳಗೆ ತಲೆದೋರಿದರು ಫಡಫಡ
ಫಲುಗುಣನ ಬರಹೇಳೆನುತ ದ್ರೋಣಾದಿ ನಾಯಕರು ೨೦

ದೊಡ್ಡ ತೆಗೆಯಲಿ ಪಾರ್ಥ ಪವನಜ
ರಿದ್ದರಾದರೆ ಬರಲಿ ಸಮರವ
ಹೊದ್ದಲಾಪರೆ ಹೊಗಲಿ ಹರಿ ತೋರಲಿ ಸಹಾಯತೆಯ
ಇದ್ದರೆಯು ರಣವಿಜಯ ವನಿತೆಗೆ
ಹೊದ್ದಿಗರು ದ್ರುಪದಾದಿ ರಾಯರ
ಹೊದ್ದಿಸಲು ಬೇಡವರಿಗಂಜುವೆವೆನುತ ನೂಕಿದರು ೨೧

ಗುರುತನುಜ ವೃಷಸೇನ ಮಾದ್ರೇ
ಶ್ವರ ಜಯದ್ರಥ ಶಕುನಿ ದುಸ್ಸಹ
ಗುರು ಸುಶರ್ಮ ವಿಕರ್ಣ ಭೂರಿಶ್ರವ ಸುಲೋಚನರು
ಧರಣಿಪತಿ ಭಗದತ್ತ ಯವನೇ
ಶ್ವರ ಕಳಿಂಗ ಸುಕೇತು ದುರ್ಜಯ
ದುರುಳ ದುಶ್ಶಾಸನನಲಂಬುಸರೈದಿದರು ರಣವ ೨೨

ಗೆದ್ದರೆಯು ಗೆಲವಿಲ್ಲ ಹಾರುವ
ರುದ್ದುರುಟುತನಕೇನನೆಂಬೆನು
ಗದ್ದುಗೆಯ ಹೊರೆಗರಸ ಕರೆದರೆ ಭವವ ಮರೆದಿರಲ
ಹದ್ದು ಕಾಗೆಯ ಮನೆಯ ಬಾಣಸ
ವಿದ್ದಯೆಮ್ಮದು ಯಮನ ನಿಳಯಕೆ
ಬಿದ್ದಿನರು ನೀವೆಂದೆನುತ ಕಲಿ ಮತ್ಸ್ಯನಿದಿರಾದ ೨೩

ನಕುಲ ಕುಂತೀಭೋಜಸುತ ಸೋ
ಮಕ ಘಟೋತ್ಕಚ ದ್ರುಪದ ಪ್ರತಿವಿಂ
ಧ್ಯಕ ಶತಾನೀಕಾಭಿಮನ್ಯು ಯುಯುತ್ಸು ಸೃಂಜಯರು
ಸಕಲ ಸನ್ನಾಹದಲಿ ಯುದ್ಧೋ
ದ್ಯುಕುತರಾದರು ಚಕಿತಚಾಪರು
ಮುಕುತ ಶಸ್ತ್ರಾವಳಿಯ ಮಳೆಗಾಲವನು ನಿರ್ಮಿಸುತ ೨೪

ಹಿಡಿದನಶ್ವತ್ಥಾಮ ದ್ರುಪದನ
ಪಡೆಯೊಡನೆ ಬವರವನು ಕೃಪ ಮುಂ
ಗುಡಿಯೊಡನೆ ಹೊಕ್ಕಿರಿದು ತಡೆದನು ಸಾತ್ಯಕಿಯ ರಥವ
ಕಡುಹು ಮಿಗೆ ಕೈದೋರಿ ಪವನಜ
ನೊಡನೆ ಗುರು ಕಾದಿದನು ರಾಯನ
ನುಡಿಸಿ ಕೌರವರಾಯ ತಾಗಿದನಾಹವಾಗ್ರದಲಿ ೨೫

ಸೆಣಸು ಮಿಗಲಭಿಮನ್ಯು ಭೀಷ್ಮನ
ಕೆಣಕಿದನು ದುಶ್ಶಾಸನನು ಫಲು
ಗುಣನ ತರುಬಿದನಾ ಘಟೋತ್ಕಚನೊಡನೆ ಭಗದತ್ತ
ಕಣೆಗೆದರಿ ಸಹದೇವ ನಾರಾ
ಯಣಬಲವ ಬೆರಸಿದನು ಮತ್ಸ್ಯನ
ಹೊಣಕೆಯಿಂದ ಸುಶರ್ಮ ತಾಗಿನದರಸ ಕೇಳೆಂದ ೨೬

ಬೆರಸಿ ಹೊಯ್ದರು ತಿವಿದರೆಚ್ಚರು
ಹರೆಗಡಿದರರೆಗಡಿದರೆತ್ತಿದ
ರರೆದರಿಟ್ಟೊರಸಿದರು ತರಿದರು ತುಳುಕಿ ತೂರಿದರು
ಸರಳು ಸರಿಯಲು ಜೋಡು ಜರಿಯಲು
ತುರಗ ಧೂಪಿಸೆ ಸಾರಥಿಯ ಕೈ
ಹರಿಯೆ ಕಾದಿತು ವೀರ ನಾಯಕವಾಡಿ ಧೈರ್ಯದಲಿ ೨೭

ಕೆಲಬರಾಯುಧ ಮುರಿದು ಸಾರಥಿ
ಯಳಿದು ಕೆಲಬರು ರಥ ವಿಸಂಚಿಸಿ
ಕೆಲರು ಕೆಲಬರು ಬಳಲಿದರು ಪೂರಾಯದಲಿ ಘಾಯದಲಿ
ಕೆಲರು ಜುಣುಗಿತು ಕಂಡ ಮುಖದಲಿ
ಕೆಲರು ಹರೆದರು ಕೈಮನದ ಕಡು
ಗಲಿಗಳಚ್ಚಾಳಾಗಿ ನಿಂದರು ಕೆಲರು ಕಾಳೆಗಕೆ ೨೮

ಏರ ಸೂರೆಯ ಕಟ್ಟಿ ಹಿಂಗುವ
ಗಾರುತನ ತಾನೇನು ಸುಡು ಮುಂ
ಮಾರಿಗಳ ಮಾತೆತ್ತಲಡಸಿತು ಬಿರುದ ಸೈರಿಸುತ
ಆರಿಹೋಯಿತೆ ವೀರರಸ ತಲೆ
ದೋರ ಹೇಳಾ ರಣಕೆನುತ ಕೈ
ಮಾರಿ ಕವಿದರು ದ್ರುಪದ ಕೈಕಯ ಮತ್ಸ್ಯ ಸೃಂಜಯರು ೨೯

ಕಡುಹು ಮುರಿದುದು ಕೌರವೇಂದ್ರನ
ಪಡೆಯ ತರಹರ ದಿಕ್ಕುಗೆಟ್ಟುದು
ಮಡಮುರಿಯಲಂಗೈಸಿದರು ದುಶ್ಶಾಸನಾದಿಗಳು
ಕಡಲು ಮೈದೆಗೆವಂತೆ ಬಹ ಬಹು
ಪಡೆಯ ಕಂಡನು ದ್ರೋಣ ಫಡಫಡ
ಪಡೆಯ ತೆಗೆದರೆ ರಾಯನಾಣೆಯೆನುತ್ತ ಮಾರಾಂತ ೩೦

ಸಾಹಸಿಕರೈ ದ್ರುಪದರಿವದಿರ
ಚೋಹದೋಲೆಯಕಾರತನ ಮನ
ಗಾಹಿನಲಿ ಹೆಮ್ಮಕ್ಕಳಿವದಿರು ಶಿವಶಿವಿವದಿರಿಗೆ
ಆಹವದೊಳೋಸರಿಸಿದರೆ ಭಟ
ಸಾಹಸಕೆ ಕಲೆ ಹೊದ್ದದೇ ಸುಡು
ದೇಹವೇತಕೆ ದೆಸೆಯೆ ಸಾಕೆನುತೈದಿದನು ದ್ರೋಣ ೩೧

ಆವುದಂತರ ವನ ಕಳಭಕೈ
ರಾವತಕೆ ಮರಘು ಭಾಪು ದ್ರೋಣನ
ಡಾವರಕೆ ಪಾಂಚಾಲನೈಸರವನು ಮಹಾದೇವ
ನಾವು ದ್ರುಪದನ ಕಾಣೆವಾವೆಡೆ
ಗಾ ವಿರಾಟನು ಸರಿದನೆತ್ತಲು
ತೀವಿದರು ಸೃಂಜಯರು ನೃಪ ನಾವರಿಯೆವಿದನೆಂದ ೩೨

ಒಗ್ಗೊಡೆದು ರಿಪುಸೇನೆ ಸರಿದುದು
ತಗ್ಗಿತುಬ್ಬಾಳುಗಳ ನುಡಿ ಮನ
ನೆಗ್ಗಿದವು ಮಂಡಲಿಕರಿಗೆ ತಲೆಮುಸುಕು ಪಸರಿಸಿತು
ಲಗ್ಗೆವರೆಗಳಿಗಮಮ ಮೌನದ
ಸುಗ್ಗಿಯಾಯಿತು ಬಿರುದ ಬೈಚಿಡು
ತಗ್ಗಳಿಯರೊಳಸರಿಯೆ ಕಂಡನು ಪಾರ್ಥ ಖತಿಗೊಂಡ ೩೩

ರಣಕೆ ತವಕಿಸಿ ಬಳಿಕ ತಾಗುವ
ಕಣೆಯ ದಾಳಿಗೆ ತಳ್ಳುವಾರುವ
ಗುಣವಿದೆಂತುಟೊ ಭಂಡರಿವದಿರ ಹೋಗಹೇಳೆನುತ
ಕೆಣಕಿದನು ಬಿಲುದಿರುವನುರು ಮಾ
ರ್ಗಣದ ಹೊದೆಗಳ ಕೆದರಿ ಸಮರಾಂ
ಗಣಕೆ ಸಮ್ಮುಖನಾದನರ್ಜುನ ಸಿಂಹನಾದದಲಿ ೩೪

ಹೋರಬೇಕೇ ದ್ರುಪದನಾನ
ಲ್ಲಾರಯಿದು ಕಾದುವುದು ಚಾಪದ
ಚಾರುವಿದ್ಯೆಯ ನಿಮ್ಮೊಳರಿದುದ ನಿಮಗೆ ತೋರಿಸುವೆ
ಸೈರಿಸುವುದೀ ಬಾಲಭಾಷೆಗೆ
ವೈರಬಂಧವ ಬಿಡುವದೆನುತಾ
ಚಾರಿಯನ ರಥಹಯವ ಹೊದಿಸಿದನಸ್ತ್ರನಿಕರದಲಿ ೩೫

ಕವಿವ ಕಣೆಗಳ ದಡ್ಡಿಗಳನೊಡೆ
ತಿವಿದು ತುಳುಕಿದನಂಬಿನಬುಧಿಯ
ನವಿರಳಾಸ್ತ್ರಾನೀಕ ಡಾವರಿಸಿದವು ದಿಗುತಟವ
ಅವನಿಯೋ ದಿಕ್ಕುಗಳೊ ಪಾರ್ಥನೊ
ರವಿಯ ಕಾಣೆನು ಭಾಪು ಕಲಶೋ
ದ್ಭವನ ಕೈಮ್ಮೆಯೆನುತ ಬೆರಗಿನೊಳಿರ್ದುದಮರಗಣ ೩೬

ಈತನಸ್ತ್ರವ ಕಡಿದು ಬಾಣ
ವ್ರಾತವನು ತೆರಳಿಚಿದನರ್ಜುನ
ಸೇತುವಾದವು ಸರಳು ವೈಹಾಯಸ ಮಹಾರ್ಣವಕೆ
ಕೇತುವಾದವು ರವಿರಥಕೆ ಪುರು
ಹೂತನಾದವು ಗಿರಿಕುಳಕೆ ಕೈ
ಸೋತುವಿವ ತರಿದೊಟ್ಟಿ ಬಳಲಿದು ನಿಂದನಾ ದ್ರೋಣ ೩೭

ತ್ರಾಣ ಕೋಮಲವಾಯ್ತು ತೆಗೆಯಲಿ
ದ್ರೋಣನಾವೆಡೆ ಪಾಯದಳ ಬಿಡು
ಹೂಣೆಗರ ಬರಹೇಳು ಬಾಣದ ಬಂಡಿ ಸಾವಿರವ
ಶೋಣಿತದ ಸಾಗರದಿನವನಿಯು
ಕಾಣೆ ಹೂಳಲಿ ಪಾದರಜದಲಿ
ಕೇಣಿಗೊಂಡನು ವೈರಿಸೇನೆಯನಮಮ ಕಲಿ ಪಾರ್ಥ ೩೮

ನರನೆ ಹೊಕ್ಕವನಾದಡಯ್ಯನ
ಹರಿಬವೆನ್ನದೆನುತ್ತ ಬಿಲುದಿರು
ಮೊರೆಯ ಮೋಹರಗಡಲ ಕವಿಸಿದನಂದು ಗುರುಸೂನು
ಗುರುಸುತನ ಬಳಿವಿಡಿದು ಕಡುಹಿನ
ಉರವಣಿಸಿದರು ಶಕುನಿ ಯವನೇ
ಶ್ವರ ಕಳಿಂಗ ಸುಕೇತು ಭೂರಿಶ್ರವರು ಬಿಲುದುಡುಕಿ ೩೯

ಸಾಲ ಮಕುಟದ ಮಾಣಿಕದ ಮಣಿ
ಮಾಲಿಕೆಯ ರಶ್ಮಿಗಳು ಸೂರ್ಯನ
ಸೋಲಿಸಲು ಸಮರವನು ಹೊಕ್ಕರು ಕುರುಹಿನಶಿಬಳರು
ಕೋಲ ತೆಗಹಿನ ಕಿವಿಗಡಿಯ ಕ
ಣ್ಣಾಲಿಗಳ ಕೆಂಪುಗಳ ಹೊಗರು ಭ
ಡಾಳಿಸಲು ಬಲುಖತಿಯ ಸುಭಟರು ಹಳಚಿತರ್ಜುನನ ೪೦

ಏನ ಹೇಳುವೆನವರ ಶರ ಸಂ
ಧಾನವನು ಕಲಿ ಪಾರ್ಥನನುಸಂ
ಧಾನವನು ಕೈಯೊಡನೆಯನಿಬರ ಕಣೆಯ ಖಂಡಿಸಿದ
ದಾನವಾಮರರೊಳಗೆ ಸುಭಟ ನಿ
ಧಾನವನು ಪಡಿಗಟ್ಟಬಾರದು
ಮಾನವರ ಮಾತೇತಕೆಂದನು ಸಂಜಯನು ನಗುತ ೪೧

ಹಿಳುಕು ಹಿಳುಕುಗಳಡಸಿ ದೆಸೆ ಕ
ತ್ತಲಿಸಿ ಕೈಕೊಂಡವು ಪತತ್ರಾ
ವಳಿಯ ಪವನನ ಹೊಯ್ಲಿನಲಿ ಬಾಯ್ಧಾರೆ ಕಿಡಿಯೇಳೆ
ಬಳಿಸರಳ ಬಿಲ್ಲಾಳ ದಡ್ಡಿಯ
ಬಲುಹು ತರುಬಿತು ಪಡಿಮುಖದ ಮಂ
ಡಳಿಕರೆಸುಗೆಯನಮಮ ಸಮತಳಿಸಿತ್ತು ರಣಕೇಳಿ ೪೨

ಎಸುವನೊಬ್ಬನೆ ಪಾರ್ಥನನಿತುವ
ಕುಸುರಿದರಿವರು ಗುರುಸುತಾದಿಗ
ಳೆಸುವವರನಿಬರು ತರಿವನೊಬ್ಬನೆ ಅಮರಪತಿಸೂನು
ಎಸುವರಿವರರ್ಜುನನ ಮೈಯ್ಯಲಿ
ಮಸೆಯ ಕಾಣೆನು ಪಾರ್ಥನನಿಬರ
ವಿಶಿಖವನು ನೆರೆಗಡಿದು ಕೆತ್ತುವನನಿಬರೊಡಲುಗಳ ೪೩

ಕೋಲ ಕೋಳಾಹಳಕೆ ಸೈರಿಸ
ದಾಳ ನಾಯಕವಾಡಿ ಹರಿಗೆಯ
ಹೇಳಿದರು ಚಾಚಿದರು ಬಲುಬದ್ಧರದ ಬಂಡಿಗಳ
ಹೂಳೆ ಬೀಸಿದ ಗುಳದ ಕರಿಗಳ
ಹೇಳಿದರು ಬಲ ಮುರಿದಡಾಕೆಗೆ
ಮೇಲೆ ನಾವಿಹೆವೆಂದು ನಿಂದರು ಗುರುಸುತಾದಿಗಳು ೪೪

ಹರಿಬದಾಹವವೆಂಬರಾವೆಡೆ
ಹರೆದರೇ ರಣಗೇಡಿಗಳು ನುಡಿ
ಯುರಿಯ ಹೊರುವುದು ಛಾಯವತಿಶೀತಳ ಮಹಾದೇವ
ಅರಮನೆಯ ಕಾಲಾಳು ಕರಿ ರಥ
ತುರಗವಳಿದರೆ ತಮಗೆ ನಷ್ಟಿಯೆ
ಗರುವನೈ ಗುರುತನುಜನೆನುತೈದಿದನು ಕಲಿ ಪಾರ್ಥ ೪೫

ಒಗ್ಗಿ ಕವಿತಹ ತುರಗ ಸೇನೆಯು
ನಗ್ಗಡಲೊಳಿಕ್ಕಿದನು ಕರಿಗಳ
ಮೊಗ್ಗರವ ಮದೆಗೆಡಹಿದನು ಹುಡಿಮಾಡಿದನು ರಥವ
ಮುಗ್ಗಿ ಬೀಳುವ ಪಾಯದಳವನು
ನುಗ್ಗುನುಸಿ ಮಾಡಿದನು ರಕುತದ
ಸುಗ್ಗಿಯಾದುದು ಶಾಕಿನಿಯರಿಗೆ ಕಳನ ಚೌಕದಲಿ ೪೬

ಜೋಡನೊಡೆಹಾಯ್ದಂಬು ಧರಣಿಯೊ
ಳಾಡಿದವು ಗುಳ ಸರಿದ ಕರಿಗಳ
ತೋಡಿ ನೆಟ್ಟವು ಬದ್ಧರಂಗಳ ಬಾದಣವ ಕೊರೆದು
ಈಡಿರಿದವರಿಸುಭಟರೊಡಲಿನ
ಜೋಡುಗಳ ಜರಿಯೊಡೆದು ತಳಪಟ
ಮಾಡಿದವು ಚತುರಂಗಬಲವನು ಪಾರ್ಥನಂಬುಗಳು ೪೭

ತಾರು ಥಟ್ಟಿಗೆ ಕೆಡೆದವಾನೆಗ
ಳಾರು ಸಾವಿರ ತುರಗದಳದಸು
ಸೂರೆ ಹೋದುದು ಸಮರದಲಿ ಹದಿನೆಂಟು ಸಾವಿರವು
ಕಾರಿದರು ಕರುಳನು ಪದಾತಿಗ
ಳಾರು ಲಕ್ಷವು ಮೊದಲ ಲಗ್ಗೆಗೆ
ಮೂರು ಸಾವಿರ ತೇರು ನೆಗ್ಗಿದವೊಂದು ನಿಮಿಷದಲಿ ೪೮

ಹೆಣನ ತುಳಿದೊತ್ತೊತ್ತೆಯಲಿ ಸಂ
ದಣಿಸಿ ಕವಿದುದು ಮತ್ತೆ ದಳ ಭಾ
ರಣೆಯ ಬಿಂಕವನೇನನೆಂಬೆನು ಬಲಿದ ಲಗ್ಗೆಯಲಿ
ಕೆಣಕಿದವು ಕರಿಘಟೆಗಳೊಂದೆಸೆ
ಯಣುಕಿದವು ಹಯರಥವದೊಂದೆಸೆ
ಕಣೆಗೆದರಿ ಕಾಲಾಳದೊಂದೆಸೆ ಮುಸುಕಿತರ್ಜುನನ ೪೯

ಸವೆದು ಸವೆಯದು ಪೂತು ಮಝು ಕೌ
ರವನ ಸೇನಾಜಲಧಿ ನಾಯಕ
ನಿವಹವನಿತುವ ನೂಕಿ ಸವೆಯರು ಗುರುಸುತಾದಿಗಳು
ಕವಿಯಲೀ ಬಲ ಮತ್ತೆ ಸಂದಣಿ
ತವಕಿಸಲಿ ತಾವನಿಬರುರೆ ಮಗು
ಳವಗಡಿಸಲಿ ವಿನೋದವೈಸಲೆಯೆನುತ ನರನೆಚ್ಚ ೫೦

ಅಗಲದಲಿ ದಿಗುವಲಯವೀಯಂ
ಬುಗಳನೀದುದೊ ಮೇಣು ಬಾಣದ
ಮುಗಿಲ ಮೂಲೆಯು ಕೊಯಿದರೋ ಜರುಹಿದರೊ ಶರನಿಧಿಯ
ಝುಗರುಝುಗಿಸಿ ಹೊಳೆಹೊಳೆವ ಬಾಯ್ಧಾ
ರೆಗಳ ಬೆಳಗಿನ ದಾಳಿ ಧೀಂಕಿಡೆ
ಮೊಗೆದವರ್ಜುನನಂಬು ರಿಪುಚತುರಂಗ ಜೀವನವ ೫೧

ಮತ್ತೆ ಮುರಿದನು ಹತ್ತು ಸಾವಿರ
ಮತ್ತಗಜವನು ರಥಚಯವ ನು
ಗ್ಗೊತ್ತಿದನು ಹನ್ನೆರಡು ಸಾವಿರವನು ರಣಾಗ್ರದಲಿ
ಹೊತ್ತಿತಾತನ ವಿಕ್ರಮಾಗ್ನಿಗೆ
ಹತ್ತು ಕೋಟಿ ಪದಾತಿ ರಾವ್ತರು
ತೆತ್ತರಸುವನು ಲಕ್ಷ ಕೌರವರಾಯ ಸೇನೆಯಲಿ ೫೨

ತೀರಿತಡವಿಯ ಕಡಿತ ಗಿರಿಗಳ
ಹೋರಟೆಗೆ ಹೊಗಬೇಕು ಸೇನೆಗೆ
ಪಾರುಖಾಣೆಯ ಕೊಟ್ಟಿವಾಗಳೆ ಗುರುಸುತಾದಿಗಳ
ಭಾರಣೆಗೆ ಕೊಡಬೇಕು ಸಮಯವ
ನಾರುಭಟೆಯಲಿ ಮಲೆವುದೈ ಕೈ
ವಾರವೇಕೀ ಕಾಯದಲಿ ಕಕ್ಕುಲಿತೆ ಬೇಡೆಂದ ೫೩

ಜೇನ ಹುಟ್ಟಿನ ಹುಳುವ ಬಡಿದ ಸ
ಗಾನತನ ತಾನೇನು ಚೂಣಿಯ
ಸೇನೆಗೀನೆಯ ಸವರಲಾಯಿತೆ ಶೌರ್ಯಸಿರಿ ನಿನಗೆ
ನಾನದಾರೆಂದರಿಯೆ ಫಡ ಗುರು
ಸೂನುವಲ್ಲಾ ವೈರಿತಿಮಿರಕೆ
ಭಾನು ಬಗೆಯೈಯೆನುತ ಹೊಕ್ಕನು ದ್ರೋಣನಂದನನು ೫೪

ಬಳಿಯಲೊಡಗವಿಯಿತ್ತು ಚಾತು
ರ್ಬಲ ಸಹಿತ ದ್ರೋಣಾದಿಗಳು ತೋ
ರಳವ ಹಿಡಿ ಹಿಡಿ ಧನುವ ಸುರಿ ಸುರಿ ಸರಳ ಸರಿವಳೆಯ
ಗಳಹದಿರು ಮೈದೋರು ದಾನವ
ಕುಲದಿಶಾಪಟ ಸಹಿತ ನೀನೆಸು
ಕಳೆಯದಿರು ಕಾಲವನೆನುತ ಕವಿದೆಚ್ಚರತಿರಥರು ೫೫

ಗುರುಸುತನ ಕೂರಂಬು ದ್ರೋಣನ
ಸರಳಸಾಗರ ಶಲ್ಯನಂಬಿನ
ಹೊರಳಿ ಶಕುನಿಯ ಬಾಣಪಂಜರ ಕೃಪನ ಶರಮೇಘ
ಕುರುಪತಿಯ ನಾರಾಚ ವರ ದು
ರ್ಧರುಷ ಸೈಂಧವ ಶಕುನಿ ಕೃತವ
ರ್ಮರ ಶರಾವಳಿ ಹೂಳಿದವು ದ್ಯಾವಾಮಹೀತಳವ ೫೬

ಉರಿಯ ರಾಜ್ಯವ ಸೂರೆಗೊಳಲೆನು
ತರಗು ಪರಿದವೊಲಾಯ್ತು ಮೇಘದ
ನೆರವಿ ಗಾಳಿಯ ಮನೆಗೆ ಬಿದ್ದಿನ ಬಂದ ತೆರನಾಯ್ತು
ಗಿರಿಯ ಮಕ್ಕಳು ನಗುತ ವಜ್ರದ
ಕರವ ಹೊಯ್ದಂತಾಯ್ತು ಪಾರ್ಥನ
ಸರಳ ಸೀಮೆಯ ಬೆರಸಿದವು ರಿಪುಸುಭಟರಂಬುಗಳು ೫೭

ಸಹಜಕೀತನು ಚಾಪಧರ ಗುರು
ವಹುದು ಗುರುಗಳ ಮಗನೆ ಗುರುವೆಮ
ಗಹುದು ನೋಳ್ಪಡೆ ಶಿವಶಿವಾ ಕಲಿ ಶಲ್ಯ ಮಾವನಲೆ
ಮಹಿಮರಿವರೆಮ್ಮೊಡನೆಯೋದಿದ
ರಹರು ನಾವಿನ್ನಾರ ಕಳೆವೆವು
ಸಹಸ ಲೇಸೆಂದೆಚ್ಚನವರವರಸ್ತ್ರ ರಥಧನುವ ೫೮

ಮತ್ತೆ ಹೊಸ ರಥ ನೂತನಾಸ್ತ್ರದ
ಲುತ್ತಮ ಪ್ರತ್ಯುಗ್ರ ಚಾಪದ
ಲೊತ್ತರಿಸಿ ಕವಿದುದು ಕಿರೀಟಿಯ ರಥವ ಮುರಿಯೆನುತ
ಮತ್ತೆ ಕಡಿದನು ರಥವ ಚಾಪವ
ಮತ್ತೆ ಹೊಸ ಹೂಟೆಯೊಳು ಹೊಕ್ಕರು
ತೆತ್ತು ಸವೆಯರು ಶೌರ್ಯದಭಿಮಾನವನು ಪಟುಭಟರು ೫೯

ಸರಳ ಕವಿಸಿದರಿವರು ಮತ್ತದ
ಪರಿಹರಿಸಿದನು ಪಾರ್ಥನಾತನ
ಸರಳುಗಳ ಸಂವರಿಸಿ ಮುಸುಕಿದರರ್ಜುನನ ರಥವ
ತೆರಳೆಗಡಿದನು ಮತ್ತೆ ದ್ರೋಣನ
ಗುರುಸುತನ ಸೈಂಧವನ ಮಾದ್ರೇ
ಶ್ವರನ ಚಾಪವ ಕಡಿದು ಹೂಳಿದನೊಡಲೊಳಂಬುಗಳ ೬೦

ಘಾಯವಡೆದರು ಸುರಿವ ಸರಳಿಗೆ
ನಾಯಕರು ಮರಳಿದರು ಪೌರುಷ
ಮಾಯವಾಯಿತು ತನು ನಡುಗಿತಡಿಗಡಿಗೆ ಡೆಂಡಣಿಸಿ
ಕಾಯುಗಟ್ಟಿತು ಭೀತಿ ಬಿರುದಿನ
ಬಾಯೆಣಿಕೆ ಬಯಲಾಯ್ತು ಜೀವದ
ಬೀಯಕಿವರಂಜಿದರು ನೆನೆದರು ಮನೆಯ ರಾಣಿಯರ ೬೧

ದಿಟ್ಟತನ ಪೊಳ್ಳಾಯ್ತು ಶೌರ್ಯದ
ಘಟ್ಟಿ ಕರಗಿತು ಸುಭಟಧರ್ಮದ
ಬಟ್ಟೆಯನು ಹೂಳಿದರು ಹಂಗಿಗರಾದರಿಹಪರಕೆ
ಬೆಟ್ಟವಾಯಿತು ಭಂಗ ಭರದಲಿ
ಬಿಟ್ಟು ಹೋಯಿತು ರಾಯದಳ ಜಗ
ಜಟ್ಟಿಗಳು ಭಗದತ್ತ ಸೈಂಧವ ಗುರುಸುತಾದಿಗಳು ೬೨

ಉಲಿವ ಭಟ್ಟರ ಬಾಯ ಹೊಯ್ ರಥ
ದೊಳಗೆ ಕೆಡಹಲಿ ಧ್ವಜದ ಕಂಭವ
ನುಲುಕದಂತಿರೆ ರಥವ ಹರಿಸಲಿ ಸೂತಕುನ್ನಿಗಳು
ತಲೆಮುಸುಕನಿಡಿ ಛತ್ರ ಚಮರವ
ನೆಲಕೆ ಬಿಸುಡಲಿ ಹೆಸರುಗೊಂಡರ
ನುಳುಹಲಾಗದು ಬೀಳಗುತ್ತುವದೆನುತ ತಿರುಗಿದರು ೬೩

ಒಟ್ಟಿದವು ಕೈದುಗಳು ಸತ್ತಿಗೆ
ಬೆಟ್ಟವಾದವು ಸಿಂಧಸೆಳೆಗಳು
ನಟ್ಟಡವಿ ಪವಡಿಸಿದ ತೆರನಾದುದು ರಣಾಗ್ರದಲಿ
ಥಟ್ಟು ಮುರಿದುದು ಕೂಡೆ ತೆರೆ ಸಾ
ಲಿಟ್ಟ ಸಾಗರದಂತೆ ರಾಯ ಘ
ರಟ್ಟ ಕಂಡನು ಕೌರವೇಶ್ವರ ಸಕಲ ವೋಹರವ ೬೪

ಹೊರಳಿಯೊಡೆದು ಮಹಾಪ್ರಧಾನರು
ಮರಳಿದರಲಾ ಪೂತು ಮಝು ಧರ
ಧುರವ ಮಾಡಿದರೇಕೆ ಕರೆಕರೆ ಬಿರುದ ಬೆಸಗೊಂಬ
ಗುರುತನಯನೋ ಚಾಪವಿದ್ಯಾ
ಧರನೊ ಶಲ್ಯನೊ ಕೃಪನೊ ಶಕುನಿಯೊ
ವರಮಹಾರಥರಿದ್ದರೋಡುವರಲ್ಲ ದಿಟವೆಂದ ೬೫

ಹೊರೆದವನ ಕಾರ್ಯಾರ್ಥಲಾಭವ
ಸರಕುಮಾಡರು ಜಯ ವಧುವನೆ
ದ್ದೆರಗಿ ನೋಡರು ವಾರ್ತೆಗೆಯ್ಯರು ಮುಕ್ತಿವಧುವಿಂಗೆ
ಧರೆಯ ಪರಮಖ್ಯಾತಿ ಪೂಜೆಯ
ಸರಕು ಗಣಿಸರು ಶಿವಶಿವಾ ಸಂ
ಗರಕೆ ದ್ರೋಣಾದಿಗಳವೋಲು ವಿರಕ್ತರಾರೆಂದ ೬೬

ಆನೆಗಳು ಮರಳಿದವು ಸುಭಟ ನಿ
ಧಾನರೋಸರಿಸಿದರು ಫಡ ಸುರ
ಧೇನುಗಳಲಾ ಕರೆಯರೇ ಪರಬಲಕ್ಕೆ ವಾಂಛಿತವ
ಈ ನಪುಂಸಕರುಗಳ ನಂಬಿದ
ನಾನು ನೀತಿಜ್ಞನೆ ಮಹಾ ದೇ
ವೇನ ಹೇಳುವೆನೆನುತ ಭೀಷ್ಮನ ಹೊರೆಗೆ ನಡೆತಂದ ೬೭

ಒಂಬತ್ತನೆಯ ಸಂಧಿ

ಸೂ. ವೀರ ಭಾಗೀರತಿಯ ತನಯನೊ
ಳಾ ರಿಪುವ್ರಜವಿಜಯ ಫಲುಗುಣ
ಹೋರಿದನು ಸರಿಸಮರದಲಿ ತ್ರೈಜಗವು ಕೊಂಡಾಡೆ

ಜೀಯ ಚಿತ್ತೈಸಿದರೆ ಸೇನಾ
ನಾಯಕರ ಮೋರೆಗಳ ಮುಸುಕುಗ
ಳಾಯತವನೀ ಹೊತ್ತು ಮುನ್ನಿನ ಬಿರುದಿನುಬ್ಬಟೆಯ
ಕಾಯಿದಿರೆ ಧರ್ಮವನು ಜಠರಪ
ರಾಯಣರ ಪರಿಣತೆಯಲಾದ ಪ
ಲಾಯನದ ಹೆಬ್ಬೆಳಸ ನೋಡೆನೆ ಭೀಷ್ಮನಿಂತೆಂದ ೧

ಅರಸ ಹೊಲ್ಲೆಹವೇನು ಪಾರ್ಥನ
ಸರಿಸದಲಿ ನಿಲುವೆದೆಯ ಬಲುಹು
ಳ್ಳರನು ದೇವಾಸುರರೊಳರಿಯೆನು ಮನುಜರೇನಹರು
ತಿರುಗಬೇಕವಗಡಿಸಿದರೆ ಸಂ
ಗರವ ಹೊಗುವುದು ಸರಿದರಿದಿರುವ
ನರಿದು ಕಾದುವುದಿದರಲಾವುದು ಕೊರತೆ ಹೇಳೆಂದ ೨

ನುಡಿಯೆವಾವು ಸಮರ್ಥರೆಂದುದೆ
ಕಡು ನಿಧಾನವು ಸುಭಟರೋಟವೆ
ಕಡೆಗೆ ಪರವಹ ಧರ್ಮ ಪಾರ್ಥನು ಜಗದೊಳಗ್ಗಳನು
ನಡುಹೊಳೆಯ ಹರಿಗೋಲ ಮೂಲೆಯ
ಕಡಿದಿರಾದರೆ ನಮ್ಮ ಪುಣ್ಯದ
ಬಿಡುಗಡೆಯ ಕಾಲವು ಶಿವಾಯೆಂದರಸ ಬಿಸುಸುಯ್ದು ೩

ಖತಿಯ ಮಾಡಿತೆ ನಮ್ಮ ನುಡಿಯನು
ಚಿತಪರಾಯಣರೆಂದು ನಿನ್ನಯ
ಮತಿಗೆ ತೋರಿತು ಮಾಣಲದು ನೋಡಾದಡಾಹವವ
ಕ್ಷಿತಿಯ ಹೊರೆಕಾರರಿಗೆ ಸೌಖ್ಯ
ಸ್ಥಿತಿಯ ಮಾಡುವೆನಿನ್ನು ಕುರು ಭೂ
ಪತಿ ವಿರೋಧಿಯ ವಿಧಿಯನೀಗಳೆ ತೋರಿಸುವೆನೆಂದ ೪

ತರಿಸಿದನು ಹದಿನೆಂಟು ಸಾವಿರ
ಸರಳ ಹೊದೆಗಳ ಬಂಡಿಗಳ ಹ
ನ್ನೆರಡು ಸಾವಿರ ಧನುವನುರುತರದಖಿಳ ಕೈದುಗಳ
ಕರಸಿದನು ಸೈಂಧವನ ಶಲ್ಯನ
ಗುರುಸುತನ ಕೃತವರ್ಮ ಭಗದ
ತ್ತರ ಶಕುನಿ ದುಶ್ಶಾಸನ ದ್ರೋಣಾದಿ ನಾಯಕರ ೫

ಒತ್ತುಗೊಡುವರೆ ಹಗೆಗೆ ಹಜ್ಜೆಯ
ನಿತ್ತು ತೆಗೆವರೆ ಪಾರ್ಥ ಪರಬಲ
ಮೃತ್ಯುವೇ ಸಾಕಿನ್ನು ಹೋಗಲಿಯೆಂದು ಫಲವೇನು
ಮತ್ತೆ ಕೆಣಕುವುದರ್ಜುನನ ನ
ಮ್ಮತ್ತ ಬಿಡದಿರೆ ವೈರಿಸೇನೆಯ
ಕಿತ್ತು ಬಿಸುಡುವೆ ಯಮಪುರಕೆ ಮೋಹರಿಸಿ ನೀವೆಂದ ೬

ವಿಗಡರನಿಬರು ನೆರೆದು ಪಾರ್ಥನ
ತೆಗೆದರತ್ತಲು ಭೀಷ್ಮನಿತ್ತಲು
ಹೊಗೆದನಂತ್ಯದ ರುದ್ರನಗ್ಗದ ಕಣ್ಣ ಶಿಖಿಯಂತೆ
ಬಿಗಿದ ಹೊದೆಗಳ ಹರಿದು ಬಿಲ್ಲಿಂ
ದುಗುಳಿಸಿದನಂಬುಗಳನಳವಿಗೆ
ತೆಗೆದು ಪಾಂಡವ ಬಲವ ಬೆಂಬತ್ತಿದನು ಖಾತಿಯಲಿ ೭

ಕೊಂಡುಬಹ ಬಲುನಾಯಕರ ಖತಿ
ಗೊಂಡು ದಡಿಯಲಿ ಹೊಯ್ಸಿ ಸೇನೆಯ
ಹಿಂಡೊಡೆಯದೋಜೆಯಲಿ ಹುರಿಯೇರಿಸಿ ಮಹೀಶ್ವರರ
ಗಂಡುಗಲಿಯಭಿಮನ್ಯು ಸಾತ್ಯಕಿ
ಚಂಡಬಲ ಹೈಡಿಂಬರನು ಸಮ
ದಂಡಿಯಲಿ ಮೋಹರಿಸಿ ಸಮರಕೆ ನಡೆದನಾ ಭೀಷ್ಮ ೮

ತಳಿತ ಸೇನಾಜಲಧಿ ಲಗ್ಗೆಯ
ಮೊಳಗಿನಲಿ ಮೊನೆದೋರಿ ಭೀಷ್ಮನ
ಹಳಚಿದರು ಹರಹಿನಲಿ ಕವಿದರು ಕೋಡಕೈಗಳಲಿ
ಎಲೆಲೆ ಪಾಂಡವ ಸೈನ್ಯ ಸಾಗರ
ಮಲೆತುದೋ ಬರಹೇಳು ಮಾರಿಯ
ಬಳಗವನು ಹೆಣದಿನಿಹಿಕಾರರ ಕರೆಯಿ ರಕ್ಕಸರ ೯

ಸೂಸಿದರು ಸರಳುಗಳನಗಲಕೆ
ಹಾಸಿ ಹಬ್ಬಿದವಶ್ವ ನಿಕರವ
ಕೀಸಿದವು ಕೀಲಿಸಿದವಾನೆಗಳುದರದೆಲುವಿನಲಿ
ಬೀಸಿ ಬಿಸುಟವು ಪಾಯ್ದಳವ ರಥ
ರಾಸಿಗಳ ಜರುಹಿದವು ಬಲ ವಾ
ರಾಸಿಯಲಿ ತಾಯ್ಮಳಲ ಮೊಗೆದವು ಭೀಷ್ಮನಂಬುಗಳು ೧೦

ಅಡಸಿ ತುಂಬಿತು ಗಗನ ತಲೆಗಳ
ಗಡಣದಲಿ ದೆಸೆಯೆಲ್ಲ ಬಾಣದ
ಕಡಿಯಮಯವಾಯಿತ್ತು ಹೆಣಮಯವಾಯ್ತು ರಣಭೂಮಿ
ಕಡುಗಲಿಯ ಕೈ ಚಳಕದಂಬಿಂ
ಗೊಡಲ ತೆತ್ತುದು ವೈರಿಬಲ ಬಿಡೆ
ಜಡಿದುದಂತಕ ನಗರವದ್ಭುತವಾಯ್ತು ಸಂಗ್ರಾಮ ೧೧

ಹೊಡೆಗೆಡೆದವಾನೆಗಳು ಥಟ್ಟಿಗೆ
ಕೆಡೆದವಗ್ಗದ ತುರಗದಳ ಮೈ
ಗಡಿತದಲಿ ಮುಂಕೊಂಡು ಹೊರಳಿತು ಕೂಡೆ ಪಾಯದಳ
ಮಡ ಮುರಿದು ನುಗ್ಗಾಯ್ತು ರಥ ಬೆಳು
ಗೊಡೆ ಪತಾಕಾದಂಡ ಚಮರಿಗ
ಳುಡಿದು ಬಿದ್ದವು ಕೇಣವಿಲ್ಲದೆ ತರಿದನರಿಬಲವ ೧೨

ಮಂಡಿಸಿತು ನೊರೆರಕುತ ಕರುಳಿನ
ಜೊಂಡು ಮಸಗಿತು ಕಡಿದ ಖಂಡದ
ದಿಂಡು ತಳಿತುದು ತೊಗಲ ಕೊಯ್ಲಿನ ಮುರಿದ ಮೂಳೆಗಳ
ಜೊಂಡೆ ನರವಿನ ಜುರಿತ ಮಿದುಳಿನ
ಹೊಂಡೆಯದ ತೊರಳಿಗಳ ಕೊರಳಿನ
ತುಂಡುಗಳ ಕಾಲಾಂತಕನ ಹೆಬ್ಬೆಳಸು ಹುಲುಸಾಯ್ತು ೧೩

ಆಗ ಹೂಡಿದನಾಗ ಬಾಣವ
ತೂಗಿ ಬರಸೆಳೆದೆಚ್ಚನಹಿತರ
ನಾಗ ತಾಗಿದವಂಬು ಬಲ್ಲವರಾರು ಕೈಲುಳಿಯ
ಬಾಗಿಹುದು ಬಲು ಬಿಲ್ಲು ಕಿವಿವರೆ
ಗಾಗಿ ರಿಪುಬಲ ನಿಮಿಷ ನಿಮಿಷಕೆ
ನೀಗಿಹುದು ನಿಟ್ಟುಸಿರನೆಲೆ ಭೂಪಾಲ ಕೇಳೆಂದ ೧೪

ಬೀಳುತಿರ್ದರು ಭಟರು ಮತ್ತೆ ಥ
ಡಾಳಿಸಿತು ತಲೆಮಾರಿಗಳು ಹೆಣ
ಸಾಲನೆಡಹಿದರರುಣವಾರಿಯ ತೊರೆಯನೀಸಿದರು
ಆಳು ಹೊಕ್ಕುದು ದಂತಿಘಟೆಗಳು
ತೂಳಿದವು ಕಡುಹೆದ್ದು ತುರಗದ
ಮೇಲೆ ರಾವುತರಳವಿಗೊಟ್ಟುದು ತೇರ ಬಾಹೆಯಲಿ ೧೫

ಆಳು ಕುದುರೆಯ ಬೀಯಮಾಡಿ ನೃ
ಪಾಲ ಮಾಡುವುದೇನು ದೊರೆಗಳು
ಕಾಳೆಗಕೆ ಮೈದೋರಬಾರದೆ ಭೀಮ ಫಲುಗುಣರು
ಚಾಳ ನೂಕಿಸಿ ಹೊತ್ತುಗಳೆವರು
ಹೇಳಿ ಫಲವೇನಿನ್ನು ರಣ ಹೀ
ಹಾಳಿ ತಮಗಿಲ್ಲೆಂದು ಗಹಗಹಿಸಿದನು ಕಲಿಭೀಷ್ಮ ೧೬

ದಿವಿಜ ನಗರಿಯ ಸೂಳೆಗೇರಿಗೆ
ಕವಿವ ಮನವೇ ಮುಂದು ಹಜ್ಜೆಗೆ
ತವಕಿಸುವರಳುಕುವರೆ ಮೇಣ್ ಕೈತಪ್ಪ ಮಾಡಿಸೆನು
ಕವಿಯಿರೈ ಕಾಲಾಳು ರಾವುತ
ರವಗಡಿಸಿರೈ ಜೋದರೆಸಿರೈ
ನವ ಮಹಾರಥರಂಬ ಕರೆಯಿರೆನುತ್ತ ಕವಿದೆಚ್ಚ ೧೭

ಕಡಿದು ಬಿಸುಟನು ತುರಗ ದಳವನು
ಕೆಡಹಿದನು ಹೇರಾನೆಗಳ ತಡೆ
ಗಡಿದನೊಗ್ಗಿನ ರಥವನುರೆ ಕೊಚ್ಚಿದನು ಕಾಲಾಳ
ಹೊಡಕರಿಸಿ ಹೊದರೆದ್ದು ಮುಂದಕೆ
ನಡೆನಡೆದು ಕೈಮಾಡಿ ಕಾಯದ
ತೊಡಕನಲ್ಲದೆ ತೆಕ್ಕೆಗೆಟ್ಟಿತು ಭಟರು ನಾಕದಲಿ ೧೮

ಆಳು ಮುರಿದವು ಮೇಲೆ ಹೊಕ್ಕು ನೃ
ಪಾಲಕರು ಬೊಬ್ಬಿರಿದು ಭೀಷ್ಮನ
ಕೋಲ ಕೊಳ್ಳದೆ ಕೊಂಡು ಹರಿದರು ರಥದ ಹೊರೆಗಾಗಿ
ಆಳುತನದಂಗವಣೆಯೊಳ್ಳಿತು
ಮೇಳವೇ ಬಳಿಕೇನು ಪೃಥ್ವೀ
ಪಾಲರಲ್ಲಾ ಪೂತು ಮಝು ಎನುತೆಚ್ಚನಾ ಭೀಷ್ಮ ೧೯

ಅಂಗವಿಸಿ ಮರಿಹಂಲ್ಲೆ ಖುರದಲಿ
ಸಿಂಗವನು ಹೊಯ್ವಂತೆ ನೃಪರು
ತ್ತುಂಗ ಸಹಸಿಯು ಮೇಲೆ ಕೈಮಾಡಿದರು ಖಡ್ಗದಲಿ
ಅಂಗವಣೆಯನು ಹೊಗಳುತಾ ದಿವಿ
ಜಾಂಗನಾ ಕಾಮುಕರ ಮಾಡಿಯು
ಭಂಗ ಭೀಷ್ಮನು ಮೆರೆದನುನ್ನತ ಬಾಹುವಿಕ್ರಮವ ೨೦

ಧರಣಿಪತಿಗಳು ಹತ್ತು ಸಾವಿರ
ವ್ರುಳಿತಾ ದಿವಸದಲಿ ಹಿಂದಣ
ಕೊರತೆಯುಳಿಲೆಕ್ಕಕ್ಕೆ ಕೊಂದನು ಹತ್ತು ಸಾವಿರವ
ಮರಳಿ ಮೂಸಾವಿರವ ಮತ್ತಂ
ತೆರಡು ಸಾವಿರ ಮತ್ತೆ ಐಸಾ
ವಿರವ ಸವರಿದನಹಿತ ಬಲದಲಿ ಭೂಪ ಕೇಳೆಂದ ೨೧

ಭುವನ ನೆರೆ ಹೊಗೆವಂದು ಹೆಚ್ಚಿದ
ಶಿವನ ಖತಿ ಮೈದೋರಿತೆನೆ ರಿಪು
ನಿವಹದಲಿ ನೆಲೆಗೊಂಡುದೀತನ ಖಾತಿ ಕೊಪ್ಪರಿಸಿ
ಜವನ ಪುರಿಗಿಂಬಿಲ್ಲ ಕೊಂಡೊ
ಯ್ವವರು ಕೈಗುಂದಿದರು ಗಂಗಾ
ಭವನು ಕೊಲುವುದ ಬಿಡನಿದೇನೆನುತಿರ್ದುದಮರಗಣ ೨೨

ಬಲವನದ ಹೊದರೆಲ್ಲಿ ಸೇನಾ
ಜಲನಿಧಿಯ ಸುಳಿವೆಲ್ಲಿ ಸುಭಟರ
ಕಳಕಳದ ಕಡುಹೆಲ್ಲಿ ಖರೆಯದ ರಥಿಕರವರೆಲ್ಲಿ
ಹೊಳೆದು ಮೊಳಗಿದನಲ್ಲಿ ಬಾಣದ
ಬಲೆಯ ಬೀಸಿದನಲ್ಲಿ ರಕುತದ
ಹೊಳೆಯು ಹರಿಸಿದನಲ್ಲಿ ಗಂಗಾಸೂನು ಖಾತಿಯಲಿ ೨೩

ಕಡುಹು ಹಿರಿದೋ ಕಾಲರುದ್ರನ
ಪಡೆಯಲಾಡುವನೀತನೋ ಮೈ
ಗೊಡದಿರೋ ಬಲಹೊರಳಿಯೊಡೆಯಲಿ ಹೋಗಿ ದೆಸೆದೆಸೆಗೆ
ತಡೆಯಲರಿದೋ ತಡವು ಮಾಡದಿ
ರೊಡಲ ಬದುಕಿಸಿಕೊಳ್ಳಿ ನೋಡುವ
ರೊಡೆಯರನು ಬಳಿಕೆನುತ ಮುರಿದುದು ಪಾಂಡುಸುತಸೇನೆ ೨೪

ಜರಿದುದಲ್ಲಿಯುದಲ್ಲಿ ಭರದಲಿ
ತೆರಳಿತಲ್ಲಿಯದಲ್ಲಿ ಹಿಂದಕೆ
ಮರಳಿತಲ್ಲಿಯುದಲ್ಲಿ ರಾಯರ ಕಣ್ಣ ಸನ್ನೆಯಲಿ
ತಿರುಗಿತಲ್ಲಿಯದಲ್ಲಿ ಭಟರೆದೆ
ಬಿರಿದುದಲ್ಲಿಯದಲ್ಲಿ ಭೀಷ್ಮನ
ಸರಳಗಾಳಿಗೆ ಬೆಸುಗೆಯೊಡೆದುದು ವೈರಿಬಲವೋಘ ೨೫

ಬಲವ ನಿಲಿಸಲು ನೂಕದನಿಲಜ
ನಳುಕಿದನು ಸಹದೇವ ಹಿಂದಣಿ
ಗೊಲೆದ ಧೃಷ್ಟದ್ಯುಮ್ನ ನಕುಲರು ನೆನೆದರನುಚಿತವ
ಕಲಿ ಘಟೋತ್ಕಚನಧಮ ಧರ್ಮವ
ಬಳಸಿದನು ಪಾಂಚಾಲ ಮತ್ಸ್ಯರು
ಹಲರು ನಡೆದುದೆ ಮಾರ್ಗವೆಂದೇ ಮುರುಹಿದರು ಮುಖವ ೨೬

ಹದುಳವಿಡುವವರಿಲ್ಲ ಸೇನೆಯ
ಮೊದಲಿಗರು ಮುನ್ನೋಟವಿಕ್ಕಿತು
ಕದನದಲಿ ಕೈಸೂರೆಗೊಟ್ಟರು ಜಯವ ತಮತಮಗೆ
ಎದೆಯ ನೀವಿದನಹಿತ ನೃಪನ
ಭ್ಯುದಯವೆರಡೆಲೆಯಾಯ್ತು ಸಾಹಸಿ
ಸದೆದನೋ ಕಲಿ ಭೀಷ್ಮನೆಂದುದು ಮೇಲೆ ಸುರಕಟಕ ೨೭

ಸಕಲ ದೆಸೆಯಲಿ ಮುರಿದು ಬಹ ನಾ
ಯಕರ ಕಂಡನು ಪಾರ್ಥನಸುರಾಂ
ತಕಗೆ ತೋರಿದನಕಟ ನೋಡಿದಿರೆಮ್ಮವರ ವಿಧಿಯ
ನಕುಲನಿಲ್ಲಾ ಭೀಮನೋ ಸಾ
ತ್ಯಕಿಯೊ ಸೇನಾಪತಿಯೊ ಕಟಕಟ
ವಿಕಳರೋಡಿದರೋಡಲಿದಿರಿಗೆ ರಥವ ಹರಿಸೆಂದ ೨೮

ಮಾತು ಹಿಂಚಿತು ತೇರು ಸೇನಾ
ವ್ರಾತವನು ಹಿಂದಿಕ್ಕಿ ಗಂಗಾ
ಜಾತನಿದಿರಲಿ ನಿಂದುದೇನೆಂಬೆನು ಮಹಾದ್ಭುತವ
ಸೋತು ಚೆಲ್ಲಿದ ಸೇನೆ ಹರ್ಷದೊ
ಳಾತು ನಿಂದುದು ಮತ್ತೆ ಭಂಗದ
ಮಾತದೇತಕೆ ಕೇಳು ಜನಮೇಜಯ ಮಹೀಪಾಲ ೨೯

ಬಲವನಾಯಕವೇ ವೃಥಾ ಹುಲು
ದಳದೊಳಗೆ ನಿಮ್ಮಗ್ಗಳಿಕೆ ಕೈ
ಯಳವ ಮನಗಲಿತನದಳವ ಬಿಲುಗಾರತನದಳವ
ಬಲಿಯಿರೇ ನಮ್ಮೊಡನೆ ಮೆಚ್ಚಿಸಿ
ಬಳಿಕ ಹಡೆಯಿರಿ ಬಿರುದನೆನುತವೆ
ಫಲುಗುಣನು ಕೈಯಿಕ್ಕಿದನು ಗಂಗಾಕುಮಾರನಲಿ ೩೦

ನಾವು ವೃದ್ಧರು ಬಿರುದು ಗಿರುದಿನ
ಲಾವಣಿಗೆ ನಮಗೇಕೆ ಹೇಳೈ
ನೀವಲ್ಲೈ ಜವ್ವನದ ಭಂಟರು ರಣದ ಧುರಭರಕೆ
ನೀವಿರಲು ನಿರ್ನಾಯಕವೆ ಸೇ
ನಾವಳಿ ಮಹಾದೇವ ಮೂದಲೆ
ಗಾವು ಲಕ್ಷ್ಯವೆ ಹೇಳು ಫಲುಗುಣ ಎಂದನಾ ಭೀಷ್ಮ ೩೧

ಕಟಕಿಯೇಕಿದು ಪರಶುರಾಮನ
ಪಟುತನಕೆ ಮದ್ದರೆದೆನೆಂಬೀ
ನಿಟಿಲನೇತ್ರನ ಭುಜಬಲಕೆ ಸಮಜೋಳಿ ಗಡ ನೀವು
ಕುಟಿಲ ಭಣಿತೆಯನರಿಯೆನಿದರೊಳು
ಭಟರು ನೀವಹುದೆನ್ನ ಶರ ಸಂ
ಘಟನವನು ಚಿತ್ತಯಿಸಿಯೆಂದನು ಪಾರ್ಥ ನಸುನಗುತ ೩೨

ಅವರು ಪೂರ್ವರು ಪರಶುರಾಮು
ಪ್ರವರರನು ಮೆಚ್ಚಿಸಿದೆವೀಗಳಿ
ನವರು ಕಡುಜಾಣಾಯ್ಲರೆಂದು ಸುರೇಖರೆಂದಿಹರು
ಅವರ ಮೆಚ್ಚಿಸಬಹುದು ನೀವಾ
ಹವ ಸುವಿದ್ಯಾ ದುರ್ವಿದಗ್ಧರು
ನಿವಗೆ ನಾವಿದಿರಾಗಬಲ್ಲೆವೆಯೆಂದನಾ ಭೀಷ್ಮ ೩೩

ಬರಿಯ ಮಾತೋ ಚಾಪ ವಿದ್ಯದೊ
ಳರಿತವುಂಟೋ ಹೊತ್ತುಗಳೆಯದೆ
ಹೆರಿಸಿರೇ ನಾರಿಯನು ನಿಮ್ಮಯ ಬಾಣಗರ್ಭಿಣಿಯ
ಅರಿಯಬಹುದೆನಲಹುದಹುದು ಕೈ
ಮರೆಯದಿರು ಕೈಕೊಳ್ಳೆನುತ ಬೊ
ಬ್ಬಿರಿದು ಪಾರ್ಥನನದ್ದಿದನು ಬಾಣಾಂಬುರಾಶಿಯಲಿ ೩೪

ಒಳ್ಳಿತೈ ಕೈ ಚಳಕವಾವನ
ಲಿಲ್ಲ ಹರಹರ ಪರಶುರಾಮನ
ನಲ್ಲಿ ಮೆಚ್ಚಿಸಿದಂದವಿನಿತೋ ಮತ್ತೆ ಬೇರುಂಟೊ
ಒಳ್ಳೆಗರನೋಡಿಸಿದ ಸಹಸವ
ನಿಲ್ಲಿ ತೋರಲು ನೆನೆದಿರೇ ತ
ಪ್ಪಲ್ಲ ತಪ್ಪಲ್ಲೆನುತ ಕಣೆಗಳ ಕಡಿದನಾ ಪಾರ್ಥ ೩೫

ಖೋಡಿ ಮಾಡದಿರೆಲೆ ಕಿರೀಟಿ ವಿ
ಭಾಡಿಸುವುದರಿದೇ ದೊಠಾರಿಸಿ
ಯಾಡುವುದು ದೊರೆಗುಚಿತವೇ ಗರುವಾಯಿಗಂಗವಿದೆ
ನೋಡು ನೋಡಾದರೆ ಕಪರ್ದಿಯ
ಕೂಡೆ ನೀ ಹೊಯಿದಾಡಿ ಬಿಲ್ಲ ಸ
ಘಾಡನಹೆ ದಿಟ ಕಾದುಕೊಳ್ಳೆನುತೆಚ್ಚನಾ ಭೀಷ್ಮ ೩೬

ಇದು ಹೊಸತು ಬಾಣಾಬ್ಧಿ ವೇಲೆಯ
ನೊದೆದು ಹಾಯ್ದುದೊ ಭುವನವಳಿವು
ದುದಯಿಸಿದ ಮಳೆಗಾಲವೋ ಮಾಮಾ ಶರಾವಳಿಯೊ
ಹೊದರಡಸಿ ಕಿಡಿಯೆದ್ದು ದೆಸೆಗಳ
ಹೊದಿಸಿದವು ಹೊಳೆದರ್ಜುನನ ಮು
ತ್ತಿದವು ಕೆತ್ತಿದವರಿಯ ಸೀಸಕ ಜೋಡು ಮೊಚ್ಚೆಯವ ೩೭

ಹನುಮ ಮಸೆಗಂಡನು ಮುರಾಂತಕ
ಕನಲಿದನು ಕಡುನೊಂದು ಪಾರ್ಥನ
ತನುವಿನಲಿ ಹೆಬ್ಬಟ್ಟೆಯಾದುದು ಬಾಣಪಥಿಕರಿಗೆ
ಮೊನೆಯಲಗು ಮುಕ್ಕುರುಕೆ ರಥವನು
ತನಿಗೊಡಹಿ ಮುಗ್ಗಿದವು ತೇಜಿಗ
ಳನುವರಕೆ ಮುಖದಿರುಹಿದವು ಕಲಿ ಭೀಷ್ಮನುಪಟಳಕೆ ೩೮

ಬಸಿವ ರಕುತವ ಬಳಿದು ಖಾತಿಯ
ಮಸಕದಲಿ ಕೈಮರೆದು ಮಿಗೆ ದ
ಳ್ಳಿಸುತ ಹೊಗರಿಡುತೌಡುಗಚ್ಚುತ ಹುಬ್ಬುಗಳ ಬಲಿದು
ಹೊಸ ಮಸೆಯ ಬಾಯ್ಧಾರೆಗಳ ಶರ
ವಿಸರವನು ತೊಡಚಿದನು ಭೀಷ್ಮನ
ಮುಸುಕಿದನು ಮುಗುಳೆಚ್ಚು ಪುನರಪಿ ಕರೆದನಂಬುಗಳ ೩೯

ಮುತ್ತಿದವು ನರನಂಬು ಫಣಿಗಳು
ಹುತ್ತು ಹೊಗುವಂದದಲಿ ಕಂಡವ
ಕುತ್ತಿ ಹಾಯ್ದವು ಕೆತ್ತಿ ಹರಿದವು ಕಿಬ್ಬರಿಗಳೆಲುವ
ಮೆತ್ತಿದವು ಕೈ ಮೈಗಳಲಿ ತಲೆ
ಯೊತ್ತಿದವು ವಜ್ರಾಂಗಿಯಲಿ ಭಟ
ನತ್ತಲಿತ್ತಲೆನಲ್ಕೆ ಬಳಸಿದವಾ ನದೀಸುತನ ೪೦

ಜೋಡು ಹರಿದುದು ಹಳವಿಗೆ
ನೀಡಿ ಕೆಡೆದುದು ಸಾರಥಿಗಳಸು
ಹೂಡಿತಂತಕಪುರಿಗೆ ತೇಜಿಗಳಸುವ ಕಾರಿದವು
ಗೂಡುಗೊಂಡುದು ವಿಕ್ರಮಾನಳ
ನಾಡಬಾರದು ಭೀಷ್ಮನನು ಕೈ
ಗೂಡಿ ಕವಿಯಲಿ ದ್ರೋಣ ಗುರುಸುತರೆಂದುದಖಿಲ ಜನ ೪೧

ಸಾರು ಫಡ ಕೆಲಬಲದ ಹಂಗಿನ
ವೀರನೇ ಕಲಿ ಭೀಷ್ಮ ಮುನಿದರೆ
ಹೋರಟೆಗೆ ಬರಹೇಳು ಭರ್ಗನನಿವನ ಪಾಡೇನು
ಮೇರೆಗಿದ್ದೆನು ಮಕ್ಕಳೆಂದೇ
ವೈರಬಂಧವ ಬಿಟ್ಟೆನಕಟ ವಿ
ಕಾರಿತನವೇ ನಮ್ಮೊಡನೆಯೆನುತೆಚ್ಚನಾ ಭೀಷ್ಮ ೪೨

ಎಸಲು ಕಡಿದನು ಪಾರ್ಥನೀತನ
ವಿಶಿಖವನು ತರಿದವನು ಕಿಡಿ ದ
ಳ್ಳಿಸುವ ಧಾರೆಯ ಭೂರಿ ಬಾಣದ ಬಲೆಯ ಬೀಸಿದನು
ಕುಸುರಿದರಿದನು ಮತ್ತೆ ಜೋಡಿಸಿ
ನಿಶಿತ ಶರದಲಿ ಬಳಿಕಲವನಿಗೆ
ಹಸುಗೆ ಮಾಡಿದನಿತ್ತ ಸವೆದವು ಸರಳು ಸಮರದಲಿ ೪೩

ಉರಗ ಬಾಣವನಿವರು ಕರೆದರು
ಗರುಡ ಶರದಲಿ ಪಾರ್ಥ ತವಿಸಿದ
ನುರಿಯ ವಿಶಿಖವನಿವರು ನಂದಿಸಿದರು ಜಲಾಸ್ತ್ರದಲಿ
ಗಿರಿಶಿಲೀಮುಖಕಿವರು ವಜ್ರವ
ಹರಿಸಿದರು ತಿಮಿರಾಸ್ತ್ರವೆದ್ದರೆ
ತರಣಿ ಮಾರ್ಗಣದಿಂದ ತರಿದನು ಭೀಷ್ಮ ವಹಿಲದಲಿ ೪೪

ಆವ ವಿಧದಲಿ ಪಾರ್ಥನೆಸುವನ
ದಾವ ಬೇಗದಿ ಮುರಿವನೀತನ
ದಾವ ಚಾಪ ರಹಸ್ಯ ವಿದ್ಯೆಗಳೊಳಗೆ ಬಳಸಿದನೊ
ಆ ವಿಧದಲಾ ಪರಿಯಲಾ ಸಂ
ಭಾವನೆಯಲಾ ಲುಳಿಯಲಾ ನಾ
ನಾ ವಿಧಾನದಲೊದಗಿ ಸರಿ ಮಿಗಿಲೆನಿಸಿದನು ಭೀಷ್ಮ ೪೫

ಎರಡು ಶರದಲಿ ನರನು ಭೀಷ್ಮನ
ಕರದ ಕಾರ್ಮುಕ ದಂಡವನು ಕ
ತ್ತರಿಸಿದನು ಕೈಯೊಡನೆ ಕೊಂಡನು ಭೀಷ್ಮ ಹೊಸ ಧನುವ
ಸರಳ ಸೂಟಿಯ ತೋರಿಸಿದಡ
ಬ್ಬರಿಸಿ ಫಲುಗುಣನೈದು ಬಾಣದ
ಲರಿ ಭಟನ ಚಾಪವನು ಕಡಿ ಮೂರಾಗಿ ಖಂಡಿಸಿದ ೪೬

ಮತ್ತೆ ಹೊಸ ಚಾಪದಲಿ ಭೀಷ್ಮನು
ಮಿತ್ತು ಖತಿಗೊಂಡಂತೆ ಶರದಲಿ
ಕೆತ್ತನಾಕಾಶವನು ಕಡಿದನು ಪಾರ್ಥ ನಿಮಿಷದಲಿ
ಮುತ್ತಯನ ಕರತಳದ ಧನುವನು
ಕತ್ತರಿಸಿದನು ಹಿಡಿಯಲೀಯದೆ
ಹತ್ತು ಸಾವಿರ ಬಿಲ್ಲು ಸವೆದವು ಕುರುಪಿತಾಮಹನ ೪೭

ಉಲಿಯೆ ಕಿರುಘಂಟೆಗಳು ಹೊಳ ಹೊಳ
ಹೊಳೆವ ಶಕ್ತಿಯ ತುಡುಕಿ ಭೀಷ್ಮನು
ಫಲುಗುಣನನಿಡೆ ಕಡಿದು ಬಿಸುಟನು ನೂರು ಬಾಣದಲಿ
ಸೆಳೆದು ಫಲುಗುಣ ತಿರುಹಿ ಭೀಷ್ಮನ
ತಲೆಯ ಲಕ್ಷಿಸಿ ಹೊನ್ನ ಘಂಟೆಗ
ಳುಲಿಯೆ ಬಿಟ್ಟೇರಿಂದಲಿಡೆ ಖಂಡಿಸಿದನಾ ಭೀಷ್ಮ ೪೮

ಆವ ಚಾಪವ ತುಡುಕಿ ಕೆನ್ನೆಗೆ
ತೀವಿ ತೆಗೆಯದ ಮುನ್ನ ಫಲುಗುಣ
ನೋವದೆಸುವನು ಕಡಿದು ಬಿಸುಡುವನಿವರ ಬಿಲ್ಲುಗಳ
ಆವ ದಿವ್ಯಾಸ್ತ್ರವನು ಕುಂತಿಯ
ಮಾವ ತೊಡುವನು ತೊಡದ ಮುನ್ನ ಶ
ರಾವಳಿಯ ಮುಂಕೊಂಡು ಖಂಡಿಸಿ ಪಾರ್ಥನೆಸುತಿರ್ದ ೪೯

ಮೇಲೆ ಹೇಳಿಕೆಯಾಯ್ತು ಕೌರವ
ರಾಳಿನಲಿ ದುಶ್ಶಾಸನಂಗೆ ಕ
ರಾಳ ಭೂರಿಶ್ರವ ಜಯದ್ರಥ ಗುರು ಕೃಪಾದ್ಯರಿಗೆ
ಕೋಲ ಹೊದೆಗಳ ಬಂಡಿಯಲಿ ನಿ
ಸ್ಸಾಳ ಸೂಳಿನ ಲಗ್ಗೆಯಲಿ ಹೇ
ರಾಳದೊಡ್ಡವಣೆಯಲಿ ಪಡಿಬಲ ಕವಿದುದರವಣಿಸಿ ೫೦

ನರನ ಬೆಂಬಲವಾಗಿ ಪಾಂಚಾ
ಲರನು ಮತ್ಸ್ಯನ ಭೀಮಸೇನನ
ವರ ನಕುಲ ಸಹದೇವ ಧೃಷ್ಟದ್ಯುಮ್ನ ಸಾತ ಕಿಯ
ಅರಸನಟ್ಟಿದನಿತ್ತಲಂಬಿನ
ತಿರುಹುವೆರಳಿನ ಮೊರೆವ ಬಿಲ್ಲಿನ
ವರ ರಥದ ದುವ್ವಾಳಿ ಮೆರೆಯೆ ಶಿಖಂಡಿ ನಡೆತಂದ ೫೧

ಹತ್ತನೆಯ ಸಂಧಿ

ಸೂ. ಕುಲಕಮಲ ಖರಕಿರಣ ಪಾಂಡವ
ಬಲಕೆ ಶರಣಾಗತ ಜಲಧಿ ವರ
ನಿಲಯವೆನೆ ರಂಜಿಸಿತು ಗಂಗಾಸುತನ ಶರಶಯನ

ಕಂಡನರ್ಜುನನೌಕಿ ಕವಿವ ಶಿ
ಖಂಡಿಯನು ಮಝು ಪೂತು ಪಾಯಕು
ಗಂಡುಗಲಿಯಹೆ ಚಾಗು ತೊಟ್ಟೆಸು ಭೀಷ್ಮನವಯವವ
ಕೊಂಡು ನಡೆ ನೀನಂಜದಿರು ಕೈ
ಕೊಂಡು ನಿಲುವೆನೆನುತ್ತ ಫಲುಗುಣ
ಮುಂಡಿಸಿದನಾಲಿದನು ಸೆಳೆದನು ಬೋಳೆಯಂಬುಗಳ ೧

ಒದರಿ ಜೇವಡೆಗೈದು ಬಾಣವ
ಕೆದರಿದನು ಥಟ್ಟೈಸಿ ಚಾಪವ
ನೊದೆದು ಹಾಯ್ದವು ಕೋದವಂಬುಗಳರಿಯ ನೆತ್ತಿಯಲಿ
ಇದಿರೊಳುಲಿದು ಶಿಖಂಡಿ ಶರ ಸಂ
ಘದಲಿ ಹೂಳಿದನಾಗ ಭೀಷ್ಮನ
ಹೃದಯದಲಿ ವೈರಾಗ್ಯ ಮನೆಗಟ್ಟಿತ್ತು ನಿಮಿಷದಲಿ ೨

ಎಲೆ ಮಹಾದೇವೀ ನಪುಂಸಕ
ನಲಿ ನಿರಂತರವೆಮಗೆ ಸಮರವೆ
ಗೆಲವಿದೊಳ್ಳಿತೆ ಸುಡು ಶಿಖಂಡಿಯ ಕೂಡೆ ಬಿಲುವಿಡಿದು
ಅಳುಕದೆಚ್ಚನಲಾ ದುರಾತ್ಮನ
ನಿಲವ ತೆಗೆ ತೆಗೆಯೆನುತ ಚಾಪವ
ನಿಳುಹಿದನು ರಥದೊಳಗೆ ಗಂಗಾಸೂನು ವಹಿಲದಲಿ ೩

ನರನ ಸರಳಿಗೆ ಮೈಯ ಕೊಟ್ಟರೆ
ಮುರಿದು ರಥದಲಿ ನಿಂದು ನಿಜ ಮೋ
ಹರವ ನೋಡುತ ಶಲ್ಯ ಗುರು ಕೃಪ ಕೌರವಾನುಜರ
ಕರೆದು ನುಡಿದನು ಪಾರ್ಥನಂಬಿನ
ಹೊರಳಿ ಹೊಳ್ಳಿಸುತಿದೆ ಮದಂತಃ
ಕರಣ ಕುಂದಿತು ಕಾಯಲಾದರೆ ಬನ್ನಿ ನೀವೆಂದ ೪

ಇವು ಶಿಖಂಡಿಯ ಬಾಣವೇ ವಾ
ಸವನ ಮಗನಂಬುಗಳು ವಿಲಯದ
ಶಿವನ ಶೂಲದ ಗಾಯಕಿವು ಮಿಗಿಲೇನನುಸುರುವೆನು
ಇವನು ಸೈರಿಸಲಾರೆನಿಂದ್ರನ
ಪವಿಯ ಹೊಯ್ಲನು ಹೊರುವೆನಂತ್ಯದ
ಜವನ ದಂಡದ ಹತಿಗೆ ಹೆದರೆನು ಕೇಳಿ ನೀವೆಂದ ೫

ಪರಶುರಾಮನ ಕೊಡಲಿ ಕಡಿತವ
ಧರಿಸಲಾಪೆನು ವಿಲಯ ಭೈರವ
ನಿರಿದಡಂಜೆನು ಸಿಡಿಲು ಹೊಡೆದರೆ ರೋಮ ಕಂಪಿಸದು
ಹರನ ಪಾಶುಪತಾಸ್ತ್ರ ಬಾದಣ
ಗೊರೆದರೆಯು ಲೆಕ್ಕಿಸೆನು ಪಾರ್ಥನ
ಸರಳ ಚೂಣಿಗೆ ಸಿಲುಕಿದೆನು ಪರಿಹರಿಸಿ ನೀವೆಂದ ೬

ಹರಿಯ ಕೌಮೋದಕಿಯ ಹೊಯ್ಲನು
ಬೆರಳಲಾನುವೆನಖಿಲ ಕುಲಗಿರಿ
ಜರಿದು ಬೀಳುವಡಾನಲಾಪೆನು ನಖದ ಕೊನೆಗಳಲಿ
ಭರದಲಾದಿ ವರಾಹ ದಾಡೆಯ
ಲಿರಿದಡೆಯು ನರಸಿಂಹ ನಖದಲಿ
ಕಿರಿದಡೆಯು ಸೈರಿಸುವೆನಂಜುವೆನರ್ಜುನನ ಶರಕೆ ೭

ಒಡಲನೊಚ್ಚತಗೊಂಡವಂಬಿನ
ಕುಡಿಗೆ ನೆರೆಯದು ರಕ್ತಜಲ ಬಳಿ
ವಿಡಿದು ಕವಿವಂಬುಗಳು ಬಂಬಲ್ಗರುಳ ಸೇದಿದವು
ಉಡಿದವೆಲು ಬಾಣಂಗಳೆಲುವಾ
ಗಡಸಿದುವು ತನಿರಕುತ ಮಾಂಸವ
ನುಡುಗಿದವು ಶರವಿವು ಶಿಖಂಡಿಯ ಬಾಣವಲ್ಲೆಂದ ೮

ಚೇಳ ಬೆನ್ನಿನೊಳೊಡೆದು ಮೂಡುವ
ಬಾಲ ವೃಶ್ಚಿಕದಂತೆ ಮಸೆದಿಹ
ಬೋಳೆಯಂಬುಗಳೊಡೆದು ಮೊನೆದೋರಿದವು ಬೆನ್ನಿನೊಳು
ಕೋಲು ಪಾರ್ಥನವಿವು ಶಿಖಂಡಿಯ
ಕೋಲುಗಳು ತಾನಲ್ಲ ನಿಂದುದು
ಕಾಳಗವು ನಮಗೆನುತ ಮೆಲ್ಲನೆ ಮಲಗಿದನು ಭೀಷ್ಮ ೯

ವೀರಭಟ ಭಾಳಾಕ್ಷ ಭೀಷ್ಮನು
ಸಾರಿದನು ಧಾರುಣಿಯನಕಟಾ
ಕೌರವನ ಸಿರಿ ಸೂರೆಯೋದುದೆ ಹಗೆಗೆ ಗೆಲವಾಯ್ತೆ
ಆರನಾವಂಗದಲಿ ಬರಿಸದು
ಘೋರವಿಧಿ ಶಿವಶಿವ ಎನುತ್ತಾ
ಸಾರಥಿಯು ಕಡುಖೇದದಲಿ ತುಂಬಿದನು ಕಂಬನಿಯ ೧೦

ಹೂಳಿ ಹೋಯಿತು ಬಾಣದಲಿ ಮೈ
ತೋಳು ತೊಡೆ ಜೊಂಡೆದ್ದು ರಕುತದ
ಸಾಲುಗೊಳಚೆಯ ಕರುಳ ಕುಸುರಿಯ ಬಸಿವ ನೆಣವಸೆಯ
ಮೂಳೆಯೊಟ್ಟಿಲ ನೆಲನ ಮುಟ್ಟದ
ಜಾಳಿಗೆಯ ಹೊಗರೊಗುವ ಕೆಂಗರಿ
ಗೋಲ ಮಂಚದ ಮೇಲೆ ರಣದಲಿ ಭೀಷ್ಮ ಪವಡಿಸಿದ ೧೧

ಒರಲಿ ಕೆಡೆದರು ಹಡಪಿಗರು ಸೀ
ಗುರಿಯವರು ಸತ್ತಿಗೆಯವರು ತ
ನ್ನರಮನೆಯ ವಿಶ್ವಾಸಿಗಳು ಬಿಲುಸರಳ ನೀಡುವರು
ಗುರುವಲಾ ಮುತ್ತಯ್ಯ ನಮ್ಮನು
ಹೊರೆದ ತಂದೆಗೆ ತಪ್ಪಿದರು ಕಡು
ನರಕಿಗಳು ಪಾಂಡವರು ಸುಡುಸುಡೆನುತ್ತ ಹೊರಳಿದರು ೧೨

ಬೆದರು ತವನಿಧಿಯಾಯ್ತು ಪಟು ಭಟ
ರೆದೆಗಳಿಬ್ಬಗಿಯಾಯ್ತು ವೀರಾ
ಭ್ಯುದಯ ಕೈಸೆರೆಯೋಯ್ತು ಸುಕ್ಕಿತು ಮನದ ಸುಮ್ಮಾನ
ಹೊದರೊಡೆದು ಕುರುಸೇನೆ ತೆಗೆದೋ
ಡಿದುದು ಭಯಜಲಧಿಯಲಿ ತೇಕಾ
ಡಿದರು ಕೌರವ ಜನಪರೀ ಭೀಷ್ಮಾವಸಾನದಲಿ ೧೩

ಭೀತಿ ಬೀತುದು ಹರುಷವಲ್ಲರಿ
ಹೂತುದವರಿಗೆ ವಿಜಯ ಕಾಮಿನಿ
ದೂತಿಯರ ಕಳುಹಿದನು ತನಿ ಹೊಗರೇರಿತುತ್ಸಾಹ
ಸೋತುದಾಹವ ಚಿಂತೆ ಜರಿದುದು
ಕಾತರತೆ ನುಡಿಗೆಡೆಗುಡದೆ ಭಾ
ವಾತಿಶಯವೊಂದಾಯ್ತು ಪಾಂಡವ ಬಲದ ಸುಭಟರಿಗೆ ೧೪

ಮಲಗಿದನು ಕಲಿಭೀಷ್ಮನೆನೆ ತ
ಲ್ಲಳಿಸಿದನು ಕುರು ರಾಯನುದರದೊ
ಳಿಳಿದುದಾಯುಧವೆಂಬ ತೆರದಲಿ ತಳ್ಳುವಾರಿದನು
ಬಲಿದುಸುರ ಬಿಸುಸುಯಿಲ ಹಬ್ಬಿದ
ಕಳಕಳದ ಕಂಬನಿಯ ಕಿಬ್ಬೊನ
ಲಿಳಿವ ಕದಪಿನ ಹೊತ್ತ ದುಗುಡದ ಮುಖದೊಳೈತಂದ ೧೫

ಎಡೆ ಮುರಿದುದೈಶ್ವರ್ಯವಿನ್ನೇ
ನೊಡೆಯ ಭಿತ್ತಿಯ ಚಿತ್ರವಾದನು
ಕಡೆಗೆ ಬಂದುದೆ ಕೌರವಾನ್ವಯ ಶಿವಶಿವಾ ಎನುತ
ಹಿಡಿದ ದುಗುಡದ ಕವಿದ ಮುಸುಕಿನ
ಗಡಣದಲಿ ಗುರು ಕೃಪ ಜಯದ್ರಥ
ರೊಡನೊಡನೆ ಬರುತಿರ್ದುದಖಿಲ ಮಹೀಶ ಪರಿವಾರ ೧೬

ಕುದುರೆ ಕಂಬನಿಯಿಕ್ಕಿದವು ಮೈ
ಬಿದಿರಿದವು ದಂತಿಗಳು ಕಾಲಾ
ಳೊದರಿ ಕೆಡೆದವು ಕುಂದಿದವು ಕೈಮನದ ಕಡುಹುಗಳು
ಬೆದರಿ ಬಂದಿಗೆ ಸಿಲುಕಿತವನಿಪ
ನದಟು ವಿಕ್ರಮವಹ್ನಿ ತಂಪೇ
ರಿದುದು ಕಡುದುಮ್ಮಾನ ಕೇಣಿಯ ಹಿಡಿದುದುಭಯಬಲ ೧೭

ಬಂದು ಭೀಷ್ಮನ ಚರಣ ಸೀಮೆಯ
ಲಂದು ಕಾಯವ ಕೆಡಹಿ ವಿಗತಾ
ನಂದ ಭೂಪತಿ ಹೊರಳಿದನು ಹೇರಾಳ ಶೋಕದಲಿ
ಒಂದು ಮಗ್ಗುಲ ಕೆಲದೊಳಿವರೈ
ತಂದು ನಂದರು ಗುರು ಕೃಪಾದಿಗ
ಳೊಂದು ಮಗ್ಗುಲ ಸಾರಿ ನಿಂದರು ಕೃಷ್ಣ ಪಾಂಡವರು ೧೮

ಕವಿದ ಮುಸುಕಿನ ಕಂದಿದಾನನ
ದವನಿಪತಿ ಯಮಸೂನು ಗಂಗಾ
ಭವನ ಮಗ್ಗುಲ ಸಾರಿದನು ಕೈಚಾಚಿ ಕದಪಿನಲಿ
ಪವನಸುತ ಸಹದೇವ ಸಾತ್ಯಕಿ
ದಿವಿಜಪತಿಸುತರಾದಿ ಯಾದವ
ರವಿರಳದ ಶೋಕಾಗ್ನಿ ತಪ್ತರು ಪಂತಿಗಟ್ಟಿದರು ೧೯

ಏನ ನೆನೆದಾವುದನೊಡರ್ಚಿದೆ
ನೇನ ಹೇಳುವೆನೆನ್ನ ಪುಣ್ಯದ
ಹಾನಿಯನು ಕೈತಪ್ಪ ನೆನೆದೆನು ನಿಮ್ಮ ಸಿರಿಪದಕೆ
ನಾನದಾವುದು ಧರ್ಮತತ್ವ ನಿ
ಧಾನವೆಂದರಿಯದೆ ಕೃತಾಂತಂ
ಗಾನು ಹಂಗಿಗನಾದೆನೆಂದೊರಲಿದನು ಯಮಸೂನು ೨೦

ಖೇದವೇಕೆಲೆ ಮಗನೆ ನಿನ್ನೋ
ಪಾದಿಯಲಿ ಸುಚರಿತ್ರನಾವನು
ಮೇದಿನಿಯೊಳಾ ಮಾತು ಸಾಕೈ ಕ್ಷತ್ರಧರ್ಮವನು
ಆದರಿಸುವುದೆ ಧರ್ಮ ನಿನಗಪ
ವಾದ ಪಾತಕವಿಲ್ಲ ಸುಕೃತ
ಕ್ಕೀ ದಯಾಂಬುಧಿ ಕೃಷ್ಣ ಹೊಣೆ ನಿನಗಂಜಲೇಕೆಂದ ೨೧

ಮಗನೆ ಕೇಳೈ ಪಾರ್ಥ ಕೊರಂ
ಬುಗಳ ಹಾಸಿಕೆ ಚೆಂದವಾಯಿತು
ಹೊಗರಲಗ ತಲೆಗಿಂಬ ರಚಿಸೆನೆ ಪಾರ್ಥ ಕೈಕೊಂಡು
ಬಿಗಿದ ಬಿಲುಗೊಂಡೆದ್ದು ಮಂಡಿಸಿ
ಹೊಗರ ಕವಲಂಬೈದನೆಚ್ಚನು
ನೆಗಹಿದನು ಮಸ್ತಕವನಾ ಗಂಗಾ ಕುಮಾರಕನ ೨೨

ಹೊಳೆವ ಕಣೆಗಳ ಮಂಚ ತಲೆಗಿಂ
ಬಳವಡಿಕೆಯಲಿ ಭೀಷ್ಮ ಸುಖದಲಿ
ಮಲಗಿದನು ಬಹಿರಂಗ ಭುವನವ್ಯಾಪ್ತಿಗಳ ಮರೆದು
ನಳಿನನಾಭನ ದಿವ್ಯರೂಪನು
ಬಲಿದು ಮನದಲಿ ಹಿಡಿದು ನೋವಿನ
ಕಳಕಳಕೆ ಧೃತಿಗೆಡದೆ ಮೆರೆದನು ಬಾಣಶಯನದಲಿ ೨೩

ಒಡಲ ಜಡಿದವು ರೋಮ ರೋಮದೊ
ಳಡಸಿದಂಬುಗಳಂಗ ವೇದನೆ
ತೊಡಕಿತುಬ್ಬರಿಸಿದುದು ಥಗೆ ಗೋನಾಳಿ ನೀರ್ದೆಗೆಯೆ
ನುಡಿಯಲಾರೆನು ಮಕ್ಕಳಿರ ನೀ
ರಡಸಿದೆನು ಹಿರಿದಾಗಿಯೆನೆ ನಡ
ನಡುಗಿ ದುರ್ಯೋಧನನು ದೂತರ ಕರೆದು ನೇಮಿಸಿದ ೨೪

ತರಿಸಿದನು ಹಿಮರುಚಿಯ ಹಿಂಡಿದ
ಪರಮ ಶೀತೋದಕವೊ ತಾನೆನೆ
ಸುರಭಿ ಪರಿಮಳ ಪಾನವನು ಪರಿಪರಿಯ ಕುಡಿನೀರ
ಸರಸ ಬಹುವಿಧ ಭಕ್ಷ್ಯ ಭೋಜ್ಯವ
ನೆರಹಿದನು ಕುಡಿನೀರ ಗಿಂಡಿಯ
ನರಸ ನೀಡಲು ಕಂಡು ನಕ್ಕನು ಭೀಷ್ಮನಿಂತೆಂದ ೨೫

ಏರ ನೋವಿನೊಳಾದ ತೃಷ್ಣೆಯ
ನಾರಿಸುವರಿವರಳವೆ ಸಾಕಿವ
ತೋರದಿರು ತೆಗೆ ತೊಲಗು ಮೂಢರ ಪರಮಗುರು ನೀನು
ಆರಿತೈ ಗೋನಾಳಿ ಫಲುಗುಣ
ತೋರು ನಿನ್ನರಿತವನು ಸಲಿಲವ
ಬೀರು ಬೇಗದಿನೆನಲು ಬಿಲುಗೊಂಡೆದ್ದನಾ ಪಾರ್ಥ ೨೬

ಸಲಿಲ ಬಾಣದಲಮಲ ಗಂಗಾ
ಜಲವ ತೆಗೆದನು ತಪ್ತ ಲೋಹದ
ಜಲದವೊಲು ತನಿಹೊಳೆವ ಸಲಿಲದ ಬಹಳ ಧಾರೆಗಳ
ಇಳುಹಿದನು ಸರಳಿಂದ ವದನದ
ಬಳಿಗೆ ಬಿಡೆ ಬಹಳಾರ್ತ ಭೀಷ್ಮನು
ಗೆಲಿದನಂತಸ್ತಾಪವನು ನರನಾಥ ಕೇಳೆಂದ ೨೭

ಸಾಕು ಸಾಕೈ ತಂದೆ ನನ್ನನು
ಸಾಕಿಕೊಂಡೈ ಪಾರ್ಥ ಘನ ತೃ
ಷ್ಣಾಕುಲತೆ ಬೀಳ್ಕೊಂಡುದತಿಶಯ ತೃಪ್ತಿ ನನಗಾಯ್ತು
ಸಾಕೆನುತ ಫಲುಗುಣನ ಪರಮ ವಿ
ವೇಕವನು ಪತಿಕರಿಸಿ ನೆರೆ ಚಿಂ
ತಾಕುಳನ ಮಾಡಿದನು ಕೌರವ ರಾಯನನು ಭೀಷ್ಮ ೨೮

ತಂದೆ ಕಂಡೈ ಕೌರವೇಶ ಪು
ರಂದರಾತ್ಮಜನತಿ ಬಳವ ನೀ
ನಿಂದೆ ಕಾಣಲುಬೇಹುದೈ ಹಲವಂಗದಲಿ ನರನ
ಹಿಂದೆ ಬಲ್ಲರು ದ್ರೋಣ ಕೃಪ ಗುರು
ನಂದನಾದಿಗಳೆಲ್ಲ ಕೇಳೈ
ಮಂದಮತಿತನ ಬೇಡವಿನ್ನು ಕೃಪಾಳುವಾಗೆಂದ ೨೯

ಅಳಿದರೊಡಹುಟ್ಟಿದರು ಹಲಬರು
ನೆಲನ ರಾಯರು ಸವೆದರತಿ ಬಲ
ರಳುಕುವರು ನರನೆಂದಡೀ ದ್ರೋಣಾದಿ ನಾಯಕರು
ಅಲಗಿನಂಬಿನ ಹಕ್ಕೆ ನಮಗಾ
ಯ್ತೊಳಜಗಳ ಸಾಕಿನ್ನು ಸೋದರ
ರೊಳಗೆ ಸಂಪ್ರತಿಯಾಗಿ ಬದುಕುವದೆಂದನಾ ಭೀಷ್ಮ ೩೦

ನಿನಗರೋಚಕವೆಮ್ಮ ಮಾತುಗ
ಳನಿಬರಿಗೆ ಸೊಗಸುವುದು ಪಾಂಡವ
ರನುಮತವು ಬೇರಿಲ್ಲ ನಮ್ಮನುಮತದೊಳಡಗಿಹರು
ತನುಜ ಕದನದ ಕಡ್ಡತನ ಬೇ
ಡೆನಗಿದುಪಕಾರವು ವೃಥಾ ಕುರು
ವನಕೆ ವಹ್ನಿಯ ಬಿತ್ತಬೇಡಕಟೆಂದನಾ ಭೀಷ್ಮ ೩೧

ಮಾತು ಕಿವಿಯೊಗದಾನು ಸಮರಂ
ಗಾತುರನು ಛಲದಂಕನೆಂಬೀ
ಖ್ಯಾತಿಯನು ಮೆರೆದಾತನಲ್ಲದೆ ರಾಜ್ಯ ಪದವಿಯಲಿ
ಸೋತ ಮನದವನಲ್ಲ ಭುವನ
ಖ್ಯಾತನೆನಿಪೊಂದಾಶೆಯನು ದಿಟ
ನೀತಿಗಳೆದರೆ ಬಳಿಕ ನಿಮ್ಮಯ ಮೊಮ್ಮನಲ್ಲೆಂದ ೩೨

ಮೊದಲಲೆಂದಿರಿ ನೀವು ಬಳಿಕೀ
ಯದುಕುಲಾಧಿಪ ಕೃಷ್ಣ ನೆರೆ ಹೇ
ಳಿದನು ಋಷಿಗಳು ಬೊಪ್ಪನವರೀ ಹದನ ಸಾರಿದರು
ವಿದುರ ಹೇಳಿದನೆಲ್ಲರಿಗೆ ತಾ
ನಿದುವೆ ಮತವೆನಗೊಬ್ಬಗೆಯು ಬಲು
ಗದನವೇ ಮತವೆಂದು ಹೇಳಿದೆ ಹಿಂದು ನಿಮಗೆಂದ ೩೩

ಒಂದು ಮತವೆನಗೊಂದು ನುಡಿ ಮನ
ವೊಂದು ಮತ್ತೊಂದಿಲ್ಲ ಸಾಕಿದ
ನೆಂದು ಫಲವೇನಿನ್ನು ಸಂಧಿಯೆ ಪಾಂಡುತನಯರಲಿ
ಇಂದು ನಿಮಗೀ ಹದನ ನಾನೇ
ತಂದು ಬಳಿಕೆನ್ನೊಡಲ ಸಲಹುವ
ಚೆಂದವೊಳ್ಳಿತು ತಪ್ಪನಾಡಿದಿರೆಂದನವನೀಶ ೩೪

ಕಾಯದಲಿ ಕಕ್ಕುಲಿತೆ ಯೇಕಿದ
ರಾಯಸವು ತಾನೇಸು ದಿನ ಕ
ಲ್ಪಾಯುಗಳಿಗೊಳಗಾಗಿ ಕಾಲನ ರಾಜಕಾರಿಯವು
ಹೇಯವೀ ಸಿರಿಯಿಂದರ ವೈರಿ ವಶ
ದಾಯತಿಕೆ ನಮಗಿಲ್ಲ ಪಾಂಡವ
ರಾಯ ಮಸ್ತಕ ಶೂಲನೆಂಬೀ ಬಿರುದ ಬಿಡೆನೆಂದ ೩೫

ಎಲವೊ ಭೀಷ್ಮರ ಮಾತುಗಳ ನೀ
ನೊಲಿವರೆಯು ಸಂಧಾನದಲಿ ನೀ
ನಿಲುವರೆಯು ದೇಹಾಭಿಲಾಷೆಗೆ ಬಲಿವರೆಯು ಮನವ
ಒಲಿದ ಭೀಮನೆ ನಿನ್ನ ಸಂಧಿಯು
ಕಳಚಿ ನಿನ್ನೊಡಹುಟ್ಟಿದೀತನ
ತಿಳಿರಕುತವನು ಸುರಿವನಲ್ಲದೆ ಬಿಡುವನಲ್ಲೆಂದ ೩೬

ಹಾ ನುಡಿಯದಿರು ನಿಲು ಪಿತಾಮಹ
ನೇನ ಬೆಸಸಿದುದಕೆ ಹಸಾದವು
ನೀನು ನಡೆ ಪಾಳಯಕೆ ಬಿಡುಗುರಿತನವ ಮಾಣೆಯಲ
ಮೌನಮುದ್ರೆಯ ಹಿಡಿಯೆನಲು ಪವ
ಮಾನನಂದನ ಖಾತಿಯಲಿ ಯಮ
ಸೂನುವನು ಬಿಡೆ ನೋಡಿ ಮೆಲ್ಲನೆ ಸರಿದನಲ್ಲಿಂದ ೩೭

ಬೀಳುಕೊಡಿರೇ ಸಾಕು ಭೀಮನು
ಬಾಲಭಾಷಿತನಾದನೀ ಭೂ
ಪಾಲ ಕೌರವನೆಂಬೆನೇ ಮೊದಲಿಗನು ಮೂರ್ಖರಿಗೆ
ಕಾಳಗದೊಳೊಡೆಹಾಯ್ದು ಸಾಯಲಿ
ಬಾಳಲೊಲಿದಂತಾಗಿ ಹೋಗಲಿ
ಹೇಳಿದಿರಿ ನಿಮ್ಮಿಂದ ತಪ್ಪಿಲ್ಲೆಂದನಸುರಾರಿ ೩೮

ಮುರಹರನ ಮಾತಹುದು ಸಾಕಿ
ನ್ನರಸ ಧರ್ಮಜ ಹೋಗು ದ್ರುಪದಾ
ದ್ಯರಿಗೆ ನೇಮವು ಪಾರ್ಥ ಮರಳೈ ತಂದೆ ಪಾಳಯಕೆ
ಧರೆಯ ಲೋಲುಪ್ತಿಯಲಿ ಸಲೆ ಕಾ
ತರಿಸಿ ತಪ್ಪಿದೆವೆಮ್ಮೊಳೆಂಬೀ
ಧರಧುರವ ನೆನೆಯದಿರಿ ವಿಜಯಿಗಳಾಗಿ ನೀವೆಂದ ೩೯

ಇವರು ಕಳುಹಿಸಿಕೊಂಡರಾ ಮಾ
ಧವನ ಮೆಲ್ಲಡಿಗಳನು ಹೃದಯದೊ
ಳವಚಿ ಕಂಗಳು ತುಂಬಿ ದೇವನ ಮೂರ್ತಿಯನು ಹಿಡಿದು
ಸವೆಯದಮಳಾನಂದ ಬಹಳಾ
ರ್ಣವದೊಳಗೆ ಮುಳುಗಾಡಿ ಲಕ್ಷ್ಮೀ
ಧವನ ಕಳುಹಿದನಿತ್ತ ಬೀಳ್ಕೊಟ್ಟನು ಸುಯೋಧನನ ೪೦

ಬವರದೊಳಗೌಚಿತ್ಯ ಪರಿಪಾ
ಕವನು ಬಲ್ಲಿರಿ ಕೌರವರ ಪಾಂ
ಡವರ ವೃತ್ತಾಂತದ ರಹಸ್ಯದ ನೆಲೆಯನರಿದಿಹಿರಿ
ನಿಮಗೆ ಬೇರೊಂದಿಲ್ಲ ನಾವ್ ಹೇ
ಳುವುದು ಕೃಷ್ಣನ ನೇಮವನು ಮಾ
ಡುವುದೆನುತ ದ್ರೋಣಾದಿ ಸುಭಟರ ಕಳುಹಿದನು ಭೀಷ್ಮ ೪೧

ಬೀಳುಕೊಂಡರು ರಾಯರಿಬ್ಬರು
ಪಾಳಯಂಗಳಿಗಿತ್ತ ಪಡುವಣ
ಶೈಲ ವಿಪುಲ ಸ್ತಂಭದೀಪಿಕೆಯಂತೆ ರವಿ ಮೆರೆದ
ಮೇಲುಮುಸುಕಿನ ಮುಖದ ಚಿತ್ತದ
ಕಾಳಿಕೆಯ ದುಮ್ಮಾನಜಲಧಿಯ
ಕಾಲುವೆಗಳೆನೆ ಕೌರವರು ಹೊಕ್ಕರು ನಿಜಾಲಯವ ೪೨

ಇವರು ಭೀಷ್ಮನ ಬೀಳುಕೊಂಡು
ತ್ಸವದ ಹರುಷದಲೊಮ್ಮೆ ಗಂಗಾ
ಭವಗೆ ತಪ್ಪಿದ ದುಗುಡ ಭಾರದಲೊಮ್ಮೆ ಚಿಂತಿಸುತ
ಕವಲು ಮನದಲಿ ಕಂಪಿಸುತ ಶಿಬಿ
ರವನು ಹೊಕ್ಕರು ನಿಖಿಲ ಸೇನಾ
ನಿವಹ ಸಹಿತವೆ ವೀರ ನಾರಾಯಣನ ಕರುಣದಲಿ ೪೩

ಶ್ರೀಮದಚಿಂತ್ಯ ಗದುಗು ವೀರ ನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪರಿಪುಷ್ಟ ವಚಃಷಟ್ಪದೀ ನಿಕಾಯ
ಶ್ರೀಮತ್ಕುಮಾರವ್ಯಾಸ ಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಭೀಷ್ಮಪರ್ವ ಸಮಾಪ್ತಮಾದುದು

ದ್ರೋಣ ಪರ್ವ

ಒಂದನೆಯ ಸಂಧಿ

ಸೂ. ರಾಯ ಕಟಕ ಪಿತಾಮಹನ ತರು
ವಾಯಲಭಿಷೇಕವನು ಕೌರವ
ರಾಯ ಮಾಡಿಸಿ ಪತಿಕರಿಸಿದನು ಕುಂಭಸಂಭವನ

ಸೋಲಿಸಿತೆ ಕರ್ಣಾಮೃತದ ಮಳೆ
ಗಾಲ ನಿನ್ನಯ ಕಿವಿಗಳನು ನೆರೆ
ಕೇಳಿದೈ ಕೌರವನ ಕದನದ ಬಾಲಕೇಳಿಗಳ
ಹೇಳುವುದು ತಾನೇನು ಕೆಂಗರಿ
ಗೋಲ ಮಂಚದ ಮಹಿಮನಿರವನು
ಮೇಲು ಪೋಗಿನ ಕಥೆಯನವಧಾನದಲಿ ಕೇಳೆಂದ ೧

ಬತ್ತಿತಂಬುಧಿ ನಿನ್ನ ಮಗ ಹೊಗು
ವತ್ತ ಕಾದುದು ನೆಲನು ನೃಪ ತಲೆ
ಗುತ್ತಿ ಹೊಗಲೊಳಕೊಳ್ಳದಂಬರವೇನನುಸುರುವೆನು
ಮೃತ್ಯು ನಿನಗೊಲಿದಿಹಳು ಬಳಿಕಿ
ನ್ನುತ್ತರೋತ್ತರವೆಲ್ಲಿಯದು ನೆರೆ
ಚಿತ್ತವಿಸುವುದು ಜೀಯ ದ್ರೋಣಂಗಾಯ್ತು ಹರಿವೆಂದ ೨

ಐದು ದಿವಸದೊಳಹಿತ ಬಲವನು
ಹೊಯ್ದು ಹೊಡೆಕುಟ್ಟಾಡಿ ರಿಪುಗಳೊ
ಳೈದೆ ದೊರೆಗಳನಿರಿದು ಮೆರೆದನು ಭುಜಮಹೋನ್ನತಿಯ
ಕೈದುಕಾರರ ಗುರು ಭಡಾಳಿಸಿ
ಮೈದೆಗೆದು ನಿರ್ಜರರ ನಗರಿಗೆ
ಹಾಯ್ದನೆನಲುರಿ ಜತರದಲಿ ಮೋಹರಿಸಿತವನಿಪನ ೩

ಶಿವಶಿವಾ ಭೀಷ್ಮಾವಸಾನ
ಶ್ರವಣ ವಿಷವಿದೆ ಮತ್ತೆ ಕಳಶೋ
ದ್ಭವನ ದೇಹವ್ಯಥೆಯ ಕೇಳ್ದೆನೆ ಪೂತು ವಿಧಿಯೆನುತ
ಅವನಿಪತಿ ದುಗುಡದಲಿ ಮೋರೆಯ
ಲವುಚಿದನು ಕರತಳವ ಚಿತ್ತದ
ಬವಣಿಗೆಯ ಭಾರಣೆಯ ಕಡುಶೋಕದಲಿ ಮೈಮರೆದ ೪

ಶೋಕವೇತಕೆ ಜೀಯ ನೀನವಿ
ವೇಕಿತನದಲಿ ಮಗನ ಹೆಚ್ಚಿಸಿ
ಸಾಕಿ ಕಲಿಸಿದೆ ಕುಟಿಲತನವನು ಕುಹಕ ವಿದ್ಯೆಗಳ
ಆಕೆವಾಳರು ಹೊರಿಗೆಯುಳ್ಳ ವಿ
ವೇಕಿಗಳು ನಿಮ್ಮಲ್ಲಿ ಸಲ್ಲರು
ಸಾಕಿದೇತಕೆ ಸೈರಿಸೆಂದನು ಸಂಜಯನು ನೃಪನ ೫

ಆರು ಕುಹಕಿಗಳಾರು ದುರ್ಜನ
ರಾರು ಖುಲ್ಲರು ನೀತಿ ಬಾಹಿರ
ರಾರು ದುರ್ಬಲರವರು ನಿನ್ನರಮನೆಯ ಮಂತ್ರಿಗಳು
ಆರು ಹಿತವರು ನೀತಿ ಕೋವಿದ
ರಾರು ಸುಜನರು ಬಹು ಪರಾಕ್ರಮ
ರಾರವರ ಹೊರಬೀಸಿ ಕಾಬುದು ನಿನ್ನ ಮತವೆಂದ ೬

ಹರಿದುದೈ ಕುರುಸೇನೆ ಬತ್ತಿದ
ಕೆರೆಯೊಳಗೆ ಬಲೆಯೇಕೆ ಹಗೆ ಹೊ
ಕ್ಕಿರಿವರಿನ್ನಾರಡ್ಡಬೀಳ್ವರು ನಿನ್ನ ಮಕ್ಕಳಿಗೆ
ಬರಿದೆ ಮನ ನೋಯದಿರು ಸಾಕೆ
ಚ್ಚರುವುದೆನೆ ತನ್ನೊಳಗೆ ಹದುಳಿಸಿ
ಸರಿಹೃದಯನೀ ಮಾತನೆಂದನು ಮತ್ತೆ ಸಂಜಯಗೆ ೭

ಘಾಸಿಯಾದೆನು ಮಗನ ಮೇಲಿ
ನ್ನಾಸೆ ಬೀತುದು ಬೆಂದ ಹುಣ್ಣಲಿ
ಸಾಸಿವೆಯ ಬಳಿಯದಿರು ಸಂಜಯ ನಿನಗೆ ದಯವಿಲ್ಲ
ಏಸು ಬಲುಹುಂಟಾದರೆಯು ಹಗೆ
ವಾಸುದೇವನ ಹರಿಬವೆಂದಾ
ನೇಸನೊರಲಿದೆನೇನ ಮಾಡುವೆನೆಂದನಂಧನೃಪ ೮

ಬೇಡ ಮಗನೇ ಪಾಂಡುಸುತರಲಿ
ಮಾಡು ಸಂಧಿಯನಸುರ ರಿಪುವಿನ
ಕೂಡೆ ವಿಗ್ರಹವೊಳ್ಳಿತೇ ಹಗೆ ಹೊಲ್ಲ ದೈವದಲಿ
ಪಾಡು ತಪ್ಪಿದ ಬಳಿಕ ವಿನಯವ
ಮಾಡಿ ಮೆರೆವುದು ಬಂಧುವರ್ಗದ
ಕೂಡೆ ವಾಸಿಗಳೇತಕೆನ್ನೆನೆ ನಿನ್ನ ಮನವರಿಯೆ ೯

ಹೋಗಲಿನ್ನಾ ಮಾತು ಖೂಳರು
ತಾಗಿ ಬಾಗರು ಸುಕೃತ ದುಷ್ಕೃತ
ಭೋಗವದು ಮಾಡಿದರಿಗಪ್ಪುದು ಖೇದ ನಮಗೇಕೆ
ಈಗಲೀ ಕದನದಲಿ ವಜ್ರಕೆ
ಬೇಗಡೆಯ ಮಾಡಿದನದಾವನು
ತಾಗಿ ದ್ರೋಣನ ಮುರಿದ ಪರಿಯನು ರಚಿಸಿ ಹೇಳೆಂದ ೧೦

ಚಿತ್ತವಿಸು ಧೃತರಾಷ್ಟ್ರ ಮಲಗಿದ
ಮುತ್ತಯನ ಬೀಳ್ಕೊಂಡು ಕೌರವ
ರಿತ್ತ ಸರಿದರು ಪಾಂಡುನಂದನರತ್ತ ತಿರುಗಿದರು
ಹೊತ್ತ ಮೋನದ ವಿವಿಧ ವಾದ್ಯದ
ಕೆತ್ತ ಬಾಯ್ಗಳ ಪಾಠಕರ ಕೈ
ಹತ್ತುಗೆಯ ಮೋರೆಯ ಮಹೀಪತಿ ಹೊಕ್ಕನರಮನೆಯ ೧೧

ಗಾಹು ಕೊಳ್ಳದು ಭೀಮ ಪಾರ್ಥರ
ಸಾಹಸವನೆಣಿಸುತ ಕಠಾರಿಯ
ಮೋಹಳದ ಮೇಲಿಟ್ಟ ಗಲ್ಲದ ಮಕುಟದೊಲಹುಗಳ
ಊಹೆದೆಗಹಿನ ಕಂಬನಿಯ ತನಿ
ಮೋಹರದ ಘನ ಶೋಕವಹ್ನಿಯ
ಮೇಹುಗಾಡಿನ ಮನದ ಕೌರವನಿತ್ತನೋಲಗವ ೧೨

ಗುರುತನುಜ ವೃಷಸೇನ ಮಾದ್ರೇ
ಶ್ವರ ಕಳಿಂಗ ವಿಕರ್ಣ ದುಸ್ಸಹ
ದುರುಳ ಶಕುನಿ ಸುಕೇತು ಭೂರಿಶ್ರವ ಜಯದ್ರಥರು
ವರ ಸುಲೋಚನ ವಿಂದ್ಯ ಯವನೇ
ಶ್ವರರು ಕೃಪ ಕೃತವರ್ಮ ಭಗದ
ತ್ತರು ಮಹಾ ಮಂತ್ರಿಗಳು ಬಂದರು ರಾಯನೋಲಗಕೆ ೧೩

ತೊಡರ ಝಣಝಣ ರವದ ಹೆಗಲಲಿ
ಜಡಿವ ಹಿರಿಯುಬ್ಬಣದ ಹೆಚ್ಚಿದ
ಮುಡುಹುಗಳ ಮಿಗೆ ಹೊಳೆವ ಹೀರಾವಳಿಯ ಕೊರಳುಗಳ
ಕಡುಮನದ ಕಲಿ ರಾಜಪುತ್ರರ
ನಡುವೆ ಮೈಪರಿಮಳದಿ ದೆಸೆ ಕಂ
ಪಿಡಲು ಭಾರವಣೆಯಲಿ ಬಂದನು ಕರ್ಣನೋಲಗಕೆ ೧೪

ಇತ್ತ ಬಾರೈ ಕರ್ಣ ಕುರುಕುಲ
ಮತ್ತವಾರಣ ಕುಳ್ಳಿರೈ ಬಾ
ಯಿತ್ತ ಬಾ ತನ್ನಾಣೆಯೆನುತವೆ ಸೆರಗ ಹಿಡಿದೆಳೆದು
ಹತ್ತಿರಾತನ ನಿಲಿಸಿ ಬಟ್ಟಲ
ಲಿತ್ತು ವೀಳೆಯವನು ಸುಯೋಧನ
ಕೆತ್ತುಕೊಂಡಿರೆ ನುಡಿಸಿದನು ಕಲಿಕರ್ಣನವನಿಪನ ೧೫

ಜೀಯ ದುಗುಡವಿದೇಕೆ ಬಿಡು ಗಾಂ
ಗೇಯನಳುಕಿದರೇನು ಕಾಣೆಯ
ಬೀಯದಲಿ ಬಡವಹುದೆ ಕನಕಾಚಲ ನಿಧಾನಿಸಲು
ರಾಯ ಜಗಜಟ್ಟಿಗಳು ರಣದೊಳ
ಜೇಯರಿರಿದೆ ಪರಿವಾರವನು ನಿ
ರ್ದಾಯದಲಿ ದಣಿಸುವೆನು ರಿಪುಗಳ ಸಿರಿಯ ಸೂರೆಯಲಿ ೧೬

ಕರ್ಣ ಕರ್ಣಕಠೋರ ಸಾಹಸ
ನಿರ್ಣಯಿಸು ಪರಸೈನ್ಯ ಸುಭಟ ಮ
ಹಾರ್ಣವಕೆ ಬಿಡು ನಿನ್ನ ವಿಕ್ರಮಬಾಡಬಾನಳನ
ಪೂರ್ಣಕಾಮನು ನೀನು ಕುರುಬಲ
ಕರ್ಣಧಾರನು ನೀನು ವಿಶ್ವವಿ
ಕರ್ಣ ನೀನೇ ರಕ್ಷಿಸೆಂದುದು ನಿಖಿಳ ಪರಿವಾರ ೧೭

ಕಾದುವೆನು ರಿಪುಭಟರ ಜೀವವ
ಸೇದುವೆನು ಸಮರಂಗ ಭೂಮಿಯ
ನಾದುವೆನು ನೆಣಗೊಬ್ಬಿನಹಿತರ ಗೋಣ ರಕುತದಲಿ
ಹೋದ ದಿವಸಂಗಳಲಿ ಕಾಳೆಗ
ಮಾದುದಂದಿನ ಭೀಷ್ಮರೊಡನೆ ವಿ
ವಾದ ಕಾರಣ ಬೇಡಿಕೊಳಬೇಹುದು ನದೀಸುತನ ೧೮

ಎಂದು ನೃಪತಿಯ ಬೀಳುಕೊಂಡಿನ
ನಂದನನು ಬೊಂಬಾಳ ದೀಪದ
ಸಂದಣಿಗಳಲಿ ಸೆಳೆದಡಾಯ್ದದ ಭಟರ ಮುತ್ತಿಗೆಯ
ಮುಂದೆ ಪಾಯವಧಾರು ರಿಪುನೃಪ
ಬಂದಿಕಾರವಧಾರು ಧಿರುಪಯ
ವೆಂದು ಕಳಕಳ ಗಜರು ಮಿಗೆ ಕುರು ಭೂಮಿಗೈತಂದ ೧೯

ಹಾಯಿದವು ನರಿ ನಾಯಿಗಳು ಕಟ
ವಾಯಲೆಳಲುವ ಕರುಳಿನಲಿ ಬಸಿ
ವಾಯ ರಕುತದಲೋಡಿದವು ರಣ ಭೂತ ದೆಸೆದೆಸೆಗೆ
ಆಯುಧದ ಹರಹುಗಳ ತಲೆಗಳ
ಡೋಯಿಗೆಯ ಕಡಿ ಖಂಡಮಯದ ಮ
ಹಾಯತದ ರಣದೊಳಗೆ ಬಂದನು ಭೀಷ್ಮನಿದ್ದೆಡೆಗೆ ೨೦

ಸರಳ ಮಂಚವ ಹೊದ್ದಿ ಭೀಷ್ಮನ
ಚರಣಕಮಲವ ಹಿಡಿದು ನೊಸಲಿನೊ
ಳೊರಸಿಕೊಂಡನು ನಾದಿದನು ಕಂಬನಿಯೊಳಂಘ್ರಿಗಳ
ಕರುಣಿಸೈ ಗಾಂಗೇಯ ಕರುಣಾ
ಶರಧಿಯೈ ಖಳತಿಲಕ ಕರ್ಣನ
ದುರುಳತನವನು ಮರೆದು ಮೆರೆವುದು ನಿಮ್ಮ ಸದ್ಗುಣವ ೨೧

ಎನಲು ಹೃದಯಾಂಬುಜದ ಪೀಠದ
ವನಜನಾಭ ಧ್ಯಾನಸುಧೆಯಲಿ
ನನೆದು ಹೊಂಗಿದ ಕರಣ ಹೊರೆಯೇರಿತ್ತು ನಿಮಿಷದಲಿ
ತನುಪುಳಕ ತಲೆದೋರೆ ರೋಮಾಂ
ಚನದ ಬಿಗುಹಡಗಿತ್ತು ಕಂಗಳ
ನನೆಗಳರಳಿದವಾಯ್ತು ಭೀಷ್ಮಂಗಿತ್ತಣವಧಾನ ೨೨

ಅಳಲದಿರು ಬಾ ಮಗನೆ ಕುರುಕುಲ
ತಿಲಕನವಸರದಾನೆ ರಿಪು ಮಂ
ಡಳಿಕಮಸ್ತಕಶೂಲ ಬಾರೈ ಕರ್ಣ ಬಾಯೆನುತ
ತುಳುಕಿದನು ಕಂಬನಿಯ ಕೋಮಳ
ತಳದಿ ಮೈದಡವಿದನು ಕೌರವ
ನುಳಿವು ನಿನ್ನದು ಕಂದ ಕದನವ ಜಯಿಸು ಹೋಗೆಂದ ೨೩

ಗಾರುಗೆಡೆದೆನು ನಿಮ್ಮನೋಲೆಯ
ಕಾರತನದುಬ್ಬಿನಲಿ ತನಿ ಮದ
ವೇರಿ ನಿಮ್ಮಲಿ ಸೆಣಸಿದೆನು ಸೇನಾಧಿಪತ್ಯದಲಿ
ದೂರ ಹೊತ್ತೆನು ರಣದ ಮಿಾಸಲಿ
ನೇರು ತಪ್ಪಿತು ನೀಲಮಣಿ ತಲೆ
ಗೇರಿಸಿದ ತಣವದಕೆ ಸರಿಯೇ ಭೀಷ್ಮ ಹೇಳೆಂದ ೨೪

ತನುಜ ತಪ್ಪೇನದಕೆ ಕಾಳೆಗ
ವೆನಗೆ ತನಗೆನಬೇಕು ವೀರರು
ಮನದ ಕಲಿತನದುಬ್ಬುಗೊಬ್ಬಿನಲೆಂಬರಿದಕೇನು
ಮನದೊಳಗೆ ಖತಿಯಿಲ್ಲ ದುರಿಯೋ
ಧನ ನೃಪತಿಯೋಪಾದಿ ನೀ ಬೇ
ರೆನಗೆ ಲೋಗನೆ ಕಂದ ಕದನವ ಜಯಿಸು ಹೋಗೆಂದ ೨೪

ಆಳುತನದ ದೊಠಾರತನ ಸರಿ
ಯಾಳಿನಲಿ ಸೆಣಸಾದೊಡೊಳ್ಳಿತು
ಮೇಳವೇ ಗುರು ದೈವದಲಿ ಕಟ್ಟುವರೆ ಬಿರುದುಗಳ
ಹಾಳಿ ಹಸುಗೆಯುನರಿಯದಾ ಹೀ
ಹಾಳಿಗೆಡಿಸಿದೆನೆಂದು ಸಭೆಯಲಿ
ಖೂಳನವಗುಣ ಶತವ ನೋಡದೆ ನಿಮ್ಮ ಮೆರೆಯೆಂದ ೨೫

ನೋವು ಮನದೊಳಗುಳ್ಳಡಾ ರಾ
ಜೀವಲೋಚನನಾಣೆ ಮಗನೇ
ಜೀವ ಕೌರವನಲ್ಲಿ ಕರಗುವುದೇನ ಹೇಳುವೆನು
ಆವನಾತನ ಬಂಧುವಾತನೆ
ಜೀವವೆನ್ನಯ ದೆಸೆಯ ಭಯ ಬೇ
ಡಾವ ಪರಿಯಿಂದವನನುಳುಹುವ ಹದನ ಮಾಡೆಂದ ೨೬

ಎನ್ನ ಹವಣೇ ಹಗೆಯ ಗೆಲುವಡೆ
ನಿನ್ನ ವಂದಿಗರಿರಲು ನೂಕದು
ತನ್ನ ಸಾಹಸವೆಲ್ಲಿ ಪರಿಯಂತಹುದು ಕದನದಲಿ
ಗನ್ನಕಾರನು ಕೃಷ್ಣನವರಿಗೆ
ತನ್ನನೊಪ್ಪಚ್ಚತಗೊಟ್ಟನಹಿತರ
ನಿನ್ನು ಗೆಲುವವರಾರು ಜಯವೆಲ್ಲಿಯದು ನಮಗೆಂದ ೨೭

ಆಲವಟ್ಟದ ಗಾಳಿಯಲಿ ಮೇ
ಘಾಳಿ ಮರಿವುದೆ ಮಿಂಚುಬುಳುವಿಗೆ
ಸೋಲುವುದೆ ಕತ್ತಲೆಯು ಕಟಕವು ಜೀಯ ಚಿತ್ತೈಸು
ಸೀಳಬಹುದೇ ಸೀಸದುಳಿಯಲಿ
ಶೈಲವನು ಹರಿಯೊಲಿದ ಮನುಜರ
ಮೇಲೆ ಮುನಿದೇಗುವರು ಕೆಲಬರು ಭೀಷ್ಮ ಹೇಳೆಂದ ೨೮

ಲೇಸನಾಡಿದೆ ಕರ್ಣ ದಿಟ ನೀ
ನೀಸು ಸಮ್ಯಜ್ಞಾನಿಯೆಂಬುದ
ನೀಸು ದಿನ ನಾವರಿಯೆವೈ ನೀ ಸತ್ಕುಲೀನನಲ
ಆ ಸುಯೋಧನಗರುಹಿ ಸಂಧಿಯ
ನೀ ಸಮಯದಲಿ ಘಟಿಸು ನೀನೆನ
ಲೈಸ ಮಾರನು ಪಾಂಡವರ ಸಂಪ್ರತಿಯ ಮಾಡೆಂದ ೨೯

ಜೀಯ ಮಂತ್ರದ ಮಾತು ರಾವುತ
ಪಾಯಕರಿಗೊಪ್ಪುವುದೆ ಅವರವ
ರಾಯತದಲೋಲೈಸಬೇಹುದು ಮೇರೆ ಮಾರ್ಗದಲಿ
ರಾಯನೊಲಿದುದ ಹಿಡಿವೆನೊಲ್ಲದ
ದಾಯವನು ಬಿಡುವೆನು ನಿಜಾಭಿ
ಪ್ರಾಯವಿದು ಸಂಪ್ರತಿಯ ನುಡಿ ತನಗಂಗವಲ್ಲೆಂದ ೩೦

ಭಾನುಸನ್ನಿಭ ಮರಳು ಭೂಪನ
ಹಾನಿ ವೃದ್ಧಿಗಳೆಲ್ಲ ನಿನ್ನದು
ನೀನು ಪಂಥದ ಜಾಣನಲ್ಲಾ ವಿಜಯನಾಗೆನಲು
ಆ ನದೀಸುತನಡಿಗೆರಗಿ ರವಿ
ಸೂನು ಕಳುಹಿಸಿಕೊಂಡು ಬಹಳ ಮ
ನೋನುರಾಗದಲೈದಿದನು ಕುರುರಾಯನೋಲಗವ ೩೧

ಭಾನುಸುತ ಕುಳ್ಳಿರು ನದೀಸುತ
ನೇನನೆಂದನು ತನ್ನ ಚಿತ್ತ
ಗ್ಲಾನಿಯನು ಬಿಸುಟೇನ ನುಡಿದನು ಭಾವಶುದ್ಧಿಯಲಿ
ಏನನೆಂಬೆನು ಜೀಯ ಬಹಳ ಕೃ
ಪಾನಿಧಿಯಲಾ ಭೀಷ್ಮನನುಸಂ
ಧಾನವಿಲ್ಲದೆ ಬೆಸಸಿ ಕಳುಹಿದನೆಂದನಾ ಕರ್ಣ ೩೨

ಇನ್ನು ಸೇನಾಪತಿಯದಾರೈ
ನಿನ್ನ ಮತವೇನುದಯವಾಗದ
ಮುನ್ನ ಬವರವ ಹಿಡಿಯಬೇಹುದು ವೈರಿ ರಾಯರಲಿ
ಎನ್ನು ನಿನ್ನಭಿಮತವನೆನೆ ಸಂ
ಪನ್ನಭುಜಬಲ ದ್ರೋಣನಿರಲಾ
ರಿನ್ನು ಸೇನಾಪತಿಗಳೆಂದನು ಭೂಪತಿಗೆ ಕರ್ಣ ೩೩

ಪ್ರಭೆಯ ದಾರಿಗೆ ಸೂರ್ಯನಿದಿರಿನೊ
ಳಭವನಿರೆ ತಾನಾರು ಭುವನಕೆ
ವಿಭುಗಳೈ ವೈಕುಂಠನಿದಿರಿನೊಳಾರು ದೇವತೆಯೈ
ವಿಭವ ನದಿಗಳಿಗುಂಟೆ ಜಲಧಿಯ
ರಭಸದಿದಿರಲಿ ನಮ್ಮ ಬಲದಲಿ
ಸುಭಟರಾರೈ ದ್ರೋಣನಿರುತಿರಲೆಂದನಾ ಕರ್ಣ ೩೪

ಜಾಗು ಜಾಗುರೆ ಕರ್ಣ ಪರರ ಗು
ಣಾಗಮವ ಪತಿಕರಿಸಿ ನುಡಿವವ
ನೀಗಳಿನ ಯುಗದಾತನೇ ಮಝ ಪೂತು ಭಾಪೆನುತ
ತೂಗುವೆರಳಿನ ಮಕುಟದೊಲಹಿನೊ
ಳಾ ಗರುವ ಭಟರುಲಿಯೆ ಲಹರಿಯ
ಸಾಗರದ ಸೌರಂಭದಂತಿರೆ ಮಸಗಿತಾಸ್ಥಾನ ೩೫

ನುಡಿಸು ನಿಸ್ಸಾಳವನು ಕರೆ ಹೊಂ
ಗೊಡನ ಹಿಡಿದೈತರಲಿ ನಾರಿಯ
ರೆಡ ಬಲನು ತೆರಹಾಗಲಿಕ್ಕಲಿ ಸಿಂಹವಿಷ್ಟರವ
ತಡವು ಬೇಡೆನೆ ಕೌರವೇಂದ್ರನ
ನುಡಿಗೆ ಮುನ್ನನುವಾಯ್ತು ವಿಪ್ರರ
ಗಡಣ ಬಂದುದು ರಚಿಸಿದರು ಮೂರ್ಧಾಭಿಷೇಚನವ ೩೬

ಸಕಲ ಸಾವಂತರು ಮಹೀಪಾ
ಲಕರು ಬಂದುದು ಚರಣದಲಿ ಕಾ
ಣಿಕೆಯನಿಕ್ಕಿತು ಕೈಯ ಮುಗಿದುದು ನಿಖಿಳ ಪರಿವಾರ
ಮಕುಟ ರತ್ನದ ಲಹರಿ ಖಡುಗದ
ವಿಕಟ ಧಾರಾರಶ್ಮಿ ದೀಪ
ಪ್ರಕರದಲಿ ಥಳಥಳಿಸೆ ರವಿಯಂವೊಲೆಸೆದನಾ ದ್ರೋಣ ೩೭

ಅರಸ ಬೇಡ್ಕೈ ವರವನೆನ್ನನು
ಕರೆದು ಮಿಗೆ ಪತಿಕರಿಸೆ ಬಳಿಕಾ
ಬರಿದೆ ಹೋಹೆನೆ ಮೆಚ್ಚಿದುದ ನುಡಿ ಖೇಡತನವೇಕೆ
ಹೊರೆ ಹೊಗದೆ ಹೇಳೆನಲು ನಗೆ ಮೊಗ
ವರಳಿ ಹೊಂಪುಳಿಯೋಗಿ ಕೌರವ
ರರಸ ನುಡಿದನು ಕಟ್ಟಿಕೊಡಿ ಧರ್ಮಜನ ನನಗೆಂದು ೩೯

ಮರಣ ಮಂತ್ರಾನುಗ್ರಹವನವ
ಧರಿಸಬಹುದೇ ಮಗನೆ ಪಾರ್ಥನ
ಪರಿಯನರಿಯಾ ಹಿಡಿಯಲೀವನೆ ಧರ್ಮನಂದನನ
ಅರಿದ ಬೇಡಿದೆ ತನಗೆ ನೂಕದ
ವರವ ವಚನಿಸಿ ಮಾಡದಿಹ ಬಾ
ಹಿರರು ನಾವಲ್ಲೆನಲು ಕೌರವರಾಯನಿಂತೆಂದ ೪೦

ಕೊಡುವಡಿದು ವರವಲ್ಲದಿದ್ದರೆ
ನುಡಿಗೆ ಮೊಳೆ ಹೊಮ್ಮುವರೆ ನಿಮ್ಮಯ
ತೊಡಕನೊಲುವವನಲ್ಲ ನೀವೇ ಬಲ್ಲಿರೆನೆ ನಗುತ
ಹಿಡಿದು ಬಿಗಿವೆನು ಪಾರ್ಥನನು ಕೆಲ
ಕಡೆಗೆ ತಪ್ಪಿಸಿ ಧರ್ಮಪುತ್ರನ
ಬಿಡೆನು ನಿನ್ನಯ ಪುಣ್ಯದಳತೆಯನರಿಯಬಹುದೆಂದ ೪೧

ಸಾಕಿದೊಳ್ಳಿತು ಚಾಪತಂತ್ರ ಪಿ
ನಾಕಿಯೇರಿಸಿ ನುಡಿದ ನುಡಿಗಳು
ಕಾಕಹುದೆ ಕೈಕೊಂಡೆವೆನುತವನೀಶ ಹರುಷದಲಿ
ಆ ಕೃಪಾದಿ ಮಹಾ ಪ್ರಧಾನಾ
ನೀಕವನು ಕಳುಹಿದನು ಮನೆಗೆ ದಿ
ವಾಕರನು ಹೆಡತಲೆಗೆ ಹಗರಿಕ್ಕಿದನು ಚಂದ್ರಮನ ೪೨

ಜಗವರಾಜಕವಾಯ್ತು ಕುಮುಂದಾ
ಳಿಗಳ ಬಾಗಿಲು ಹೂಡಿದವು ಸೂ
ರೆಗರು ಕವಿದುದು ತುಂಬಿಗಳು ಸಿರಿವಂತರರಮನೆಯ
ಉಗಿದವಂಬರವನು ಮಯೂಖಾ
ಳಿಗಳು ಭುವನದ ಜನದ ಕಂಗಳ
ತಗಹು ತೆಗೆದುದು ಸೆರೆಯ ಬಿಟ್ಟರು ಜಕ್ಕವಕ್ಕಿಗಳ ೪೩

ಸೂಳವಿಸಿ ಬೊಬ್ಬಿರಿದವುರು ನಿ
ಸ್ಸಾಳಚಯುವದ್ರಿಗಳ ಹೆಡತಲೆ
ಸೀಳೆ ಸಿಡಿಲೇಳಿಗೆಯಲೆದ್ದವು ವಿವಿಧ ವಾದ್ಯರವ
ಆಳು ನೆರೆದುದು ನೆಲ ಕುಸಿಯೆ ರಥ
ಜಾಲ ಜಡಿದುದು ಹಣ್ಣಿದಾನೆಯ
ಸಾಲು ಮೆರೆದುವು ಕುಣಿವುತಿದ್ದುವು ಕೂಡೆ ವಾಜಿಗಳು ೪೪

ತಳಿತ ಝಲ್ಲರಿಗಳಿಗೆ ಗಗನದ
ವಳಯುವೈದದು ನೆರೆದ ಸೇನೆಗೆ
ನೆಲನಗಲ ನೆರೆಯದು ನಿರೂಢಿಯ ಭಟರ ವಿಕ್ರಮಕೆ
ಅಳವು ಕಿರಿದರಿರಾಯರಿಗೆ ದಿಗು
ವಳಯುವಿಟ್ಟೆಡೆಯಾಗೆ ರಥ ಹಯ
ದಳವುಳಕೆ ಕುರುಸೇನೆ ನಡೆದುದು ದೊರೆಯ ನೇಮದಲಿ ೪೫

ಹಱಿಗೆ ಹಱಿದವು ಮುಂದೆ ಬಿಲ್ಲಾ
ಳುರವಣಿಸಿದರು ಮೋಹರವ ಮಿ
ಕ್ಕುರುಬಿದರು ಸಬಳಿಗರು ಮುಂಚಿತು ರಣಕೆ ಖಡ್ಗಿಗಳು
ತುರಗ ಕವಿದವು ದಂತಿ ಘಟೆಗಳು
ತುರುಗಿದವು ರಥ ರಾಜಿ ಮುಂಗುಡಿ
ವರಿದುದವನೀಪತಿಯ ಚೂಣಿಯ ನೃಪರ ಜೋಕೆಯಲಿ ೪೬

ಸಿಡಿಲ ಕುಡುಹುಗಳಿಂದ ಕಮಲಜ
ಹೊಡೆಯಲಬುಜಭವಾಂಡ ಭೇಱಿಯ
ಕಡುದನಿಗಳೆನಲೊದರಿದವು ನಿಸ್ಸಾಳ ಕೋಟಿಗಳು
ತುಡುಕಿದವು ತಂಬಟದ ದನಿ ಜಗ
ದಡಕಿಲನು ಫಡ ಕೌರವೇಂದ್ರನ
ತೊಡಕು ಬೇಡೆಂದೊದರುತಿದ್ದವು ಗೌರುಗಹಳೆಗಳು ೪೭

ಬಿಗಿದ ಝಲ್ಲರಿ ಮುಗಿಲ ಹೊಸ ಕೈ
ದುಗಳ ಮಿಂಚಿನ ಮಕುಟಮಣಿ ಕಾಂ
ತಿಗಳ ಸುರಧನುವಿನ ಚತುರ್ಬಲ ರವದ ಸಿಡಿಲುಗಳ
ವಿಗಡ ಕುಂಭಜ ಮೇಘ ಋತು ತನಿ
ಹೊಗರಿರಿದು ಪರಬಲದ ಕಡು ವೇ
ಸಗೆಗೆ ಕವಿದುದು ರಾಜಹಂಸ ಪ್ರಕರವೋಸರಿಸೆ ೪೮

ಕಳನ ಗೆಲಿದುದು ಬಂದು ಕೌರವ
ಬಲ ಯುಧಿಷ್ಠಿರರಾಯ ದಳ ಮುಂ
ಕೊಳಿಸಿ ಹೊಕ್ಕುದು ಜಯದ ಸುಮ್ಮಾನದ ಸಘಾಡದಲಿ
ಬಲಿದರೊಡ್ಡನು ಮಂಡಳಾಕೃತಿ
ಗೊಳಿಸಿ ಕೌರವರಿವರು ಥಟ್ಟನು
ನಿಲಿಸಿದರು ಚಂದ್ರಾರ್ಧಸದೃಶದಲಖಿಳ ಮೋಹರವ ೪೯

ಚಾಱಿಗಳು ಬಲವೆರಡರೊಳಗೊ
ಯ್ಯಾರದಲಿ ತೂಗಿದವು ಚೂಣಿಯ
ವೀರರುರವಣೆ ಮಿಗಲು ಹೊಯ್ದರು ಹೊಕ್ಕು ಪರಬಲವ
ಮಾರಿ ಮೊಗವಡದೆರೆದವೊಲು ಜ
ಜ್ಝಾರ ಮಾಸಾಳುಗಳು ನಿಜ ದಾ
ತಾರನವಸರಕೊದಗಿ ಹಣವಿನ ಋಣನ ನೀಗಿದರು ೫೦

ಬಿಟ್ಟಸೂಠಿಯೊಳೇರಿ ಕುದುರೆಗ
ಳಟ್ಟಿದವು ಕಿವಿಗೌಂಕಿದುಂಗುಟ
ವಿಟ್ಟ ಸನ್ನೆಯೊಳೊಲೆದು ಕವಿದವು ಸೊಕ್ಕಿದಾನೆಗಳು
ನಿಟ್ಟುವರಿಯಲು ಕೂಡೆ ರಥ ಸಾ
ಲಿಟ್ಟು ಹರಿದವು ಬಿಡದೆ ಸುಭಟರು
ಮುಟ್ಟಿ ಮೂದಲಿಸುತ್ತ ಹೊಯ್ದರು ಹೊಕ್ಕು ಪರಬಲವ ೫೧

ಏರುವಡೆದರು ಹೊಕ್ಕವರು ಕೈ
ದೋರಿ ಕಳಕಳಕಾರರಸುಗಳ
ಕಾರಿದರು ಕೈ ಮಾಡಿ ಕೊಂಡರು ಸುರರ ಕೋಟೆಗಳ
ತಾರು ಥಟ್ಟಿನೊಳಟ್ಟಿ ಮೈಮಸೆ
ಸೂರೆಕಾರರ ಮಿದುಳ ಜೊಂಡಿನ
ಜೋರುಗಳ ಬೀಱಿದವು ಬೇತಾಳರಿಗೆ ಭಟನಿಕರ ೫೨

ತೆಗೆಸು ದೊದ್ದೆಯನುರವಣಿಸದಿರಿ
ವಿಗಡ ಸುಭಟರು ಸಾಹಸದ ತನಿ
ಹೊಗರಿನಾತಗಳೆಲ್ಲಿ ಭೀಮಾರ್ಜುನರ ಬರಹೇಳು
ಹೊಗುವ ಬಿನುಗನು ಹೊಯ್ಯದಿರಿ ತೆಗೆ
ತೆಗೆಯೆನುತ ಸಾವಿರ ಮಹಾ ರಥ
ರಗಲದಲಿ ಬರಲುರುಬಿ ಹೊಕ್ಕನು ದ್ರೋಣ ಪರಬಲವ ೫೩

ಸಾರಿರೈ ಸಾಹಸಿಕರಿರ ಕೆಲ
ಸಾರಿರೈ ಪಾಂಚಾಲ ಮತ್ಸ್ಯರು
ವೀರರಹುದಲ್ಲೆಂಬೆವೇ ಶಿವ ಶಿವ ಮಹಾದೇವ
ಸಾರಿರೈ ನಮ್ಮೊಡನೆ ಕೈ ಮನ
ವಾರೆ ಕಾದುವ ಬಳಿಕ ಮೊದಲೊಳು
ದಾರ ಭೀಮಾರ್ಜುನರ ನೋಡುವೆನೆನುತ ಕೈಕೊಂಡ ೫೪

ಬಿನುಗು ಹಾರುವ ನಿನಗೆ ಭೀಮಾ
ರ್ಜುನರ ಪರಿಯಂತೇಕೆಯಂಬಿನ
ಮೊನೆಯಲುಣಲಿಕ್ಕುವೆನು ರಣಭೂತಕ್ಕೆ ನಿನ್ನೊಡಲ
ಎನುತ ಧೃಷ್ಟದ್ಯುಮ್ನನಿದಿರಾ
ದನು ಶರೌಘದ ಸೋನೆಯಲಿ ಮು
ಮ್ಮೊನೆಯ ರಥಿಕರ ಮುರಿದು ದ್ರೋಣನ ರಥಕೆ ಮಾರಾಂತ ೫೫

ಕಡಗಿದೆಡೆ ಕೋದಂಡ ರುದ್ರನ
ತೊಡಕಿ ಬದುಕುವರಾರು ಸಾರೆಂ
ದೊಡನೊಡನೆ ನಾರಾಚ ಜಾಲದಲರಿಭಟನ ಬಿಗಿದು
ಕಡಿದು ಬಿಸುಟನು ದ್ರುಪದತನಯನು
ಹಿಡಿದ ಬಿಲ್ಲನು ಸಾರಥಿಯನಡೆ
ಗೆಡಹಿದನು ಚಂದ್ರಾರ್ಧಶರದಲಿ ನೊಸಲನೊಡೆಯೆಚ್ಚ ೫೬

ಎಸಲು ಧೃಷ್ಟದ್ಯುಮ್ನ ದ್ರೋಣನ
ವಿಶಿಖಹತಿಯಲಿ ನೊಂದು ರಥದಲಿ
ಬಸವಳಿಯೆ ಬಳಿ ಸಲಿಸಿದನು ಪಾಂಚಾಲ ನಾಯಕರು
ಮುಸುಡ ಬಿಗುಹಿನ ಸೆಳೆದೆಡಾಯುಧ
ಹೊಸ ಪರಿಯ ಬಿರುದುಗಳ ಗಜರಥ
ವಿಸರ ಮಧ್ಯದಲೆಂಟು ಸಾವಿರ ರಥಿಕರೌಂಕಿದರು ೫೭

ರಾಯರೊಳು ಪಾಂಚಾಲರುಬ್ಬಟೆ
ಕಾಯಗಟ್ಟಿತು ಪೂತು ಮಝು ಕುರು
ರಾಯನಾಡಿತು ದಿಟವೆನುತ ಹೊಗರಂಬ ಹೊದೆಗೆದರಿ
ನೋಯಿಸಿದನುರವಣಿಸಿ ಹರಿತಹ
ನಾಯಕರನುಬ್ಬೆದ್ದ ಬಿರುದರ
ಬೀಯ ಮಾಡಿದನಹಿತ ರಥಿಕರನೆಂಟು ಸಾವಿರವ ೫೮

ಅಳುತನವುಳ್ಳವರ ಕರೆ ಪಾಂ
ಚಾಲರೊಳ್ಳೆಗರವದಿರಂಬಿನ
ಕೋಲ ಕಾಣದ ಮುನ್ನ ಹಮ್ಮೈಸುವರು ಹುರಿಯೊಡೆದು
ಖೂಳರಿವರಂತಿರಲಿ ದೊರೆ ಕ
ಟ್ಟಾಳಹನು ಕರೆ ಧರ್ಮಪುತ್ರನ
ತೋಳ ಬಲುಹನು ನೋಡಬೇಕೆಂದುರುಬಿದನು ದ್ರೋಣ ೫೯

ಸವರಿ ಹೊಕ್ಕನು ಕೆಲಬಲದ ಪಾಂ
ಡವ ಮಹಾರಥರನು ವಿಭಾಡಿಸಿ
ಪವನಜನ ಮುರಿಯೆಚ್ಚು ನಕುಲನ ರಥವ ಹುಡಿಮಾಡಿ
ಕವಲುಗೋಲಲಿ ದ್ರುಪದ ಮತ್ಸ್ಯರ
ನವಗಡಿಸಿ ಹೈಡಿಂಬನಭಿಮ
ನ್ಯುವನು ಮುಸೆಗಾಣಿಸಿ ಮಹೀಶನ ರಥಕೆ ಮಾರಾಂತ ೬೦

ಅರಸ ಫಡ ಹೋಗದಿರು ಸಾಮುದ
ಸರಸ ಕೊಳ್ಳದು ಬಿಲ್ಲ ಹಿಡಿ ಹಿಡಿ
ಹರನ ಮರೆವೊಗು ನಿನ್ನ ಹಿಡಿವೆನು ಹೋಗು ಹೋಗೆನುತ
ಸರಳ ಮುಷ್ಟಿಯ ಕೆನ್ನೆಯೋರೆಯ
ಗುರು ಛಡಾಳಿಸೆ ಧನುವನೊದರಿಸಿ
ಧರಣಿಪತಿ ಹಳಚಿದನು ಹೂಳಿದನಂಬಿನಲಿ ರಥವ ೬೧

ಶಿವಶಿವಾ ಬೆಳುದಿಂಗಳಲಿ ಮೈ
ಬೆವರುವುದೆ ಕಲಿ ಧರ್ಮಪುತ್ರನ
ಬವರದಲಿ ಬೆಂಡಹರೆ ವೀರರು ಕಂಡೆವದುಭುತವ
ನಿವಗಿದೆತ್ತಣ ಕೈಮೆ ಕೋಲ್ಗಳ
ಕವಿಸುವಂದವಿದೊಳ್ಳಿತಿದಲೇ
ನವಗಭೀಷ್ಟವೆನುತ್ತ ಕಟ್ಟಳವಿಯಲಿ ಕೈಕೊಂಡ ೬೨

ಎಲೆಲೆ ದೊರೆ ಸಿಕ್ಕಿದನು ಕರೆ ಪಡಿ
ತಳಿಸ ಹೇಳೋ ಸ್ವಾಮಿದ್ರೋಹರು
ದಳದಲಿದ್ದವರೆತ್ತ ಹೋದರು ನಾಯಕಿತ್ತಿಯರು
ಕಳವಳಿಸಿ ಸಾತ್ಯಕಿ ಘಟೋತ್ಕಚ
ರುಲಿದು ಹರಿತರೆ ಕೇಳಿದಾ ಕ್ಷಣ
ದಲಿ ಮುರಾಂತಕ ಸಹಿತ ವಹಿಲದಿ ಬಂದನಾ ಪಾರ್ಥ ೬೩

ಕಾಳಕೂಟದ ಬಹಳ ದಾಳಿಗೆ
ಶೂಲಿಯೊಡ್ಡೈಸುವವೊಲವನೀ
ಪಾಲಕನ ಹಿಂದಿಕ್ಕಿ ತಡೆದನು ಕಳಶಜನ ರಥವ
ಆಲಿಯಲುಕಿತು ತಿರುಹಿದಂಬಿನ
ಕೋಲ ಝಳಪಿಸಿ ಪೂತು ಮಝು ಮೇ
ಲಾಳು ಬಂದುದೆ ಅಕಟೆನುತ ಹಲುಮೊರೆದನಾ ದ್ರೋಣ ೬೪

ಮಂದಭಾಗ್ಯನು ಕೌರವನು ನಾ
ವೆಂದು ಮಾಡುವುದೇನು ನಿಮಿಷವು
ನಿಂದನಾದರೆ ಹಿಡಿವೆನಾಗಳೆ ಧರ್ಮನಂದನನ
ಬಂದು ಫಲುಗುಣನಡ್ಡವಿಸಲಿ
ನ್ನಿಂದುಧರ ಮುಳಿದೇನ ಮಾಡುವ
ನೆಂದು ಖಾತಿಯ ಹಿಡಿದು ರಥವನು ತಿರುಹಿದನು ದ್ರೋಣ ೬೫

ಎರಡು ಬಲದಲಿ ವೀರ ನೀ ಮಡ
ಮುರಿಯಲಿವನೇಸರವನಂಧಾ
ಸುರನೋ ತಾರಕನೋ ಹಿರಣ್ಯಾಸುರನೊ ಕೈಟಭನೊ
ಗುರುಗಳಿದಿರಲಿ ವೀರವೇ ಸಾ
ಕಿರಲಿ ಮೂದಲೆಯೆನುತಲಾ ಬಿಲು
ದಿರುವ ಮಿಡಿದೈದಿದರು ನಾಸಾವಿರ ಮಹಾರಥರು ೬೬

ಫಡ ಫಡೆಲವೋ ಪಾರ್ಥ ಭೀಷ್ಮನ
ಕೆಡಹಿದುಬ್ಬಟೆ ನಮ್ಮ ಕೂಡಳ
ವಡದು ತೆಗೆ ತೆಗೆಯೆನುತ ತುಳುಕಿದನಂಬಿನಂಬುಧಿಯ]
ಗಡಣವೊಳ್ಳಿತು ಗಾಢ ಮಿಗೆ ಬಿಲು
ವಿಡಿಯ ಬಲ್ಲಿರಿ ಸಮರ ಜಯವಳ
ವಡುವುದಳವಡದಿಹುದು ತಪ್ಪೇನೆನುತ ನರನೆಚ್ಚ ೧೭

ಜೋಡು ಜರಿಯದೆ ಹುರುಳುಗೆಡದೆ
ಚ್ಚಾಡಿದರು ಫಲುಗುಣನ ರಥದಲಿ
ಹೂಡಿದರು ಹೊಗರಂಬುಗಳನುಬ್ಬೆದ್ದು ತಮತಮಗೆ
ನೋಡಿದನು ಸಾಕಿವದಿರನು ಕೊಂ
ಡಾಡಲೇಕೆನುತನಿಬರಸುಗಳ
ತೋಡಿದನು ಕೂರಂಬಿನಲಿ ಸಾವಿರ ಮಹಾರಥರ ೧೮

ಮಡಿದು ಕೆಲಬರು ಕೊರಳಲಸುಗಳ
ಹಿಡಿದು ಕೆಲಬರು ಘಾಯವಡೆದೆಲು
ವೊಡೆದು ಕೆಲಬರು ಕೈದು ರಥವನು ಬಿಸುಟು ಕೆಲಕೆಲರು
ಹೊಡೆವ ಬಿರುಗಾಳಿಯಲಿ ಮುಗಿಲೊ
ಡ್ಡೊಡೆದವೊಲು ಮೈಮಾರಿಗಳು ಹಿಂ
ಡೊಡೆದುದ್ದೈ ಹೇರಾಳದಲಿ ಹೊಕ್ಕೆಚ್ಚನಾ ಪಾರ್ಥ ೧೯

ನಿಮಗೆ ಸದರವೆ ಪಾರ್ಥನೆಲೆ ವಿ
ಕ್ರಮದರಿದ್ರರಿರಾ ವೃಥಾ ಸಂ
ಭ್ರಮಿತರಿರ ಭಂಡಾಟವೇತಕೆ ರಣಕೆ ಹೆರತೆಗೆಯಿ
ಸಮರವಿಜಯತ್ಯಾಗಿಯೇ ತಾ
ನಮರಪತಿ ನಂದನನು ಸಾಕೀ
ಕುಮತಿಗಳ ತಡೆಯದಿರಿ ಹೋಗಲಿ ಎಂದನಾ ದ್ರೋಣ ೨೦

ಸೋಲದಲಿ ಕೌರವನ ಸೇನಾ
ಜಾಲ ಚೆಲ್ಲಿತು ವೀರ ಪಾರ್ಥನ
ಕೋಲು ಕಾಲನ ದಣಿಸಿದವು ಚತುರಂಗ ಸೇನೆಯಲಿ
ಕೋಲು ಧರಿಸಿದವೆರಕೆಗಳನೆನೆ
ಚಾಳಿಸಿತು ಪಡೆ ರವಿಯ ರಶ್ಮಿಯ
ಗೂಳೆಯವು ತೆಗೆಯಿತ್ತು ಪಡುವಣ ಕಡಲೊಳಿನನಿಳಿದ ೨೧

ಎರಡನೆಯ ಸಂಧಿ

ಸೂ. ಉಭಯ ಕಟಕಾಚಾರ್ಯ ಪಾಂಡವ
ವಿಭುವ ಹಿಡಿತಹೆನೆಂದು ಕೌರವ
ಸಭೆಗೆ ಭಾಷೆಯ ಕೊಟ್ಟು ಸಮರಕೆ ದ್ರೋಣನನುವಾದ

ಕೇಳು ಜನಮೇಜಯ ಧರಿತ್ರೀ
ಪಾಲ ತೆಗೆದವು ಬಲವೆರಡು ನಿಜ
ಪಾಳಯಂಗಳಿಗಿರುಳು ಕೌರವನಿತ್ತನೋಲಗವ
ಹೇಳು ಕರ್ಣ ದ್ರೋಣ ರಿಪು ಭೂ
ಪಾಲಕನನರೆಯಟ್ಟಿದನು ಗಡ
ಕಾಳೆಗದ ಹದನೇನೆನುತ ಕುರುರಾಯ ಬೆಸಗೊಂಡ ೧

ಏನ ಹೇಳಲುಬಹುದು ಜೀಯ ಕೃ
ಶಾನುವಡವಿಯಲಾಡಿದಂದದಿ
ನಾ ನಿರೂಢಿಯ ಭಟರ ಮುರಿದನು ಮುರಿದ ಮಾರ್ಗದಲಿ
ಸೇನೆ ಕಲಕಿತು ಬತ್ತಿದುದಧಿಯ
ಮೀನಿನಂತಿರೆ ಮರುಗಿದನು ಭಟ
ರಾ ನರೇಂದ್ರನನಳವಿಯಲಿ ಬೆಂಬತ್ತಿದನು ದ್ರೋಣ ೨

ಅಳವಿಗೊಟ್ಟನು ನೃಪತಿ ಗುರು ಕೈ
ಚಳಕದಲಿ ತೆಗೆದೆಸುತ ನಡೆದಿ
ಟ್ಟಳಿಸಿ ಹಿಡಿಹಿಂಗೊಳಗುವಾಡಿ ವಿಘಾತಿಯ ತಡೆಯೆ
ಎಲೆಲೆ ದೊರೆ ಸಿಕ್ಕಿದನು ಸಿಕ್ಕಿದ
ನಳಿದುದೋ ದ್ರೌಪದಿಯ ಸಿರಿಯೆಂ
ಬುಲುಹ ಕೇಳುತ ಪಾರ್ಥ ಬಂದನು ಬಿಟ್ಟ ಸೂಠಿಯಲಿ ೩

ವೀರರಿದ್ದೇಗುವರು ಧೈವದ
ಕೂರುಮೆಯ ನೆಲೆ ಬೇರೆ ನಮಗೊಲಿ
ದಾರು ಮಾಡುವುದೇನೆನುತ ಕಲಿಕರ್ಣ ಬಿಸುಸುಯ್ಯೆ
ಭೂರಿ ಭೂಪರು ವಿಸ್ತರದ ಗಂ
ಭೀರ ಸಾಗರದಂತಿರಲು ರಣ
ಧೀರರೆದ್ದರು ವರ ತ್ರಿಗರ್ತರು ರಾಸಜಭೆಯೊಳಗೆ ೪

ಕೇಳು ಸೇನಾನಾಥ ಕುರುಪತಿ
ಕೇಳು ಕೇಳೈ ಕರ್ಣ ಸುಭಟರು
ಕೇಳಿರೈ ದೇಶಾಧಿನಾಥರು ವೀರ ಪರಿವಾರ
ನಾಳೆ ಮೊದಲಾಗರ್ಜುನನ ನಾವ್
ಕಾಳಿಗಕೆ ಬರಲೀಯೆವೆಮ್ಮಯ
ಕಾಳೆಗದಲೇ ಸವೆಯಬೇಹುದು ಪಾರ್ಥನಂಬುಗಳು ೫

ಹಿಂದೆ ಹಿಡಿ ನೀ ಮೇಣು ಬಿಡು ಯಮ
ನಂದನನನೊಲಿದಂತೆ ಮಾಡಿ
ಲ್ಲಿಂದ ಮೇಲರ್ಜುನನ ಭಯ ನಿಮಗಿಲ್ಲ ನಂಬುವುದು
ಎಂದು ಶಪಥವ ತಮ್ಮನಿಬರೈ
ತಂದು ವಿಪ್ರರ ಕರಸಿ ವೈದಿಕ
ದಿಂದ ರಚಿಸಿದರಗ್ನಿಯನು ಮಾಡಿದರು ಭಾಷೆಗಳ ೬

ನರನ ಬಿಡಲಾಗದು ಮಹಾ ಸಂ
ಗರದೊಳೊಬ್ಬರನೊಬ್ಬರೊಪ್ಪಿಸಿ
ತೆರಳಲಾಗದು ಮುರಿಯಲಾಗದು ಕೊಂಡ ಹಜ್ಜೆಗಳ
ಹೊರಳಿವೆಣನನು ಮೆಟ್ಟಿ ಮುಂದಣಿ
ಗುರವಣಿಸುವುದು ತಪ್ಪಿದವರಿಗೆ
ನರಕವೀ ಪಾತಕರ ಗತಿ ನಮಗೆಂದು ಸಾರಿದರು ೭

ನುಡಿದ ನುಡಿಗೇಡುಗನ ವಿಪ್ರರ
ಮಡುಹಿದಾತನನಮಳ ಗುರುವಿನ
ಮಡದಿಯರಿಗಳುಪಿದನ ಸಾಕಿದ ಪತಿಗೆ ತಪ್ಪಿದನ
ಹಿಡಿದ ಶರಣಾಗತರ ಕಾಯದೆ
ಬಿಡುವವನ ನಾಸ್ತಿಕನ ವಿಪ್ರರ
ಜಡಿದು ನುಡಿದನ ಗತಿಗಳಾಗಲಿ ರಣದೊಳೋಡಿದರೆ ೮

ಎಂದು ಸಮಸಪ್ತಕರು ತಮ್ಮೊಳ
ಗಂದು ಶಪಥವ ಮಾಡಿ ವಿಪ್ರರ
ಮಂದಿಗಿತ್ತರು ಗೋ ಹಿರಣ್ಯ ಸಮಸ್ತ ವಸ್ತುಗಳ
ಇಂದು ರವಿ ಜಲ ವಹ್ನಿಯನಿಲ ಪು
ರಂದರಾದಿ ಸುರೌಘ ಸಾಕ್ಷಿಗ
ಳೆಂದು ಸೂಳೈಸಿದರು ಭುಜವನು ಸಿಡಿಲು ತನಿಹೆದರೆ ೯

ಇವರ ಮೊದಲಿಗ ಸತ್ಯರಥನಿಂ
ತಿವನ ಬಳಿ ರಥ ಹತ್ತು ಸಾವಿರ
ವಿವನೊಡನೆ ಸೇರುವೆಯ ರಥ ಮೂವತ್ತು ಸಾವಿರದ
ಭುವನವೀರ ಸುಶರ್ಮ ಮಾಳವ
ಯವನರತಿರಥ ಹತ್ತು ಸಾವಿರ
ಬವರಕಿಂತೈವತ್ತು ಸಾವಿರ ರಥಗಳೊಗ್ಗಾಯ್ತು ೧೦

ಸಭೆ ಬೆದರೆ ಕಲ್ಪಾಂತ ಶರಧಿಯ
ರಭಸವಲ್ಲಿಯೆ ಕೇಳಲಾದುದು
ಸುಭಟರಹುದೋ ಜಾಗು ಜಾಗೆನುತೊಲೆದನಾ ದ್ರೋಣ
ಅಭವನಡಹಾಯ್ದಿರಲಿ ಪಾಂಡವ
ವಿಭುವ ಹಿಡಿವೆನು ಪಾರ್ಥನೊಬ್ಬನ
ಪ್ರಭೆಗೆ ಹೆದರುವೆನುಳಿದ ವೀರರ ಬಗೆವನಲ್ಲೆಂದ ೧೧

ನಯವಿದನು ಹೊಂಬಟ್ಟಲಲಿ ವೀ
ಳೆಯವನನಿಬರಿಗಿತ್ತು ಕುರುಸೇ
ನೆಯಲಿ ಮರುಮಾತೇಕೆ ನೀವೇ ವಿಜಯವುಳ್ಳವರು
ಜಯವನಿನ್ನಾಹವದೊಳಗೆ ನಿ
ರ್ಣಯಿಸಬಹುದೆಮಗೆನುತ ಗುರು ಪಾ
ಳಯಕೆ ನೇಮವ ಕೊಟ್ಟನೋಲಗ ಹರೆದುದಾ ಕ್ಷಣಕೆ ೧೨

ಸಸಿ ಮರಣ ದಿಗುವಧುವನಾಲಿಂ
ಗಿಸಲು ಕುಮುದಿನಿ ಖತಿಯ ಹಿಡಿದಳು
ಮಸುಳಿದವು ತಾರೆಗಳು ರಜನೀನಾರಿ ಹಿಂಗಿದಳು
ಒಸೆದು ಕಮಲಿನಿ ನಗಲು ಮಿಗೆ ಹುರು
ಡಿಸುತ ಪೂರ್ವದಿಶಾನಿತಂಬಿನಿ
ನಿಶಿತ ಕೋಪದ ಕಿಡಿಯನುಗುಳಿದಳೆನಲು ರವಿ ಮೆರೆದ ೧೩

ಜೋಡು ಮಾಡಿತು ನೃಪರು ನಿಮಿಷಕೆ
ಹೂಡಿದವು ತೇರುಗಳು ಹಯತತಿ
ಕೂಡೆ ಹಲ್ಲಣಿಸಿದವು ಗುಳದಲಿ ಜಡಿದವಾನೆಗಳು
ಕೂಡೆ ಘುಮ್ಮಿಡೆ ದೆಸೆದೆಸೆಗಳ
ಲ್ಲಾಡಿದವು ಗಿರಿನಿಕರ ಬಿರುದನಿ
ಮಾಡಿದವು ನಿಸ್ಸಾಳತತಿ ಸೇನಾಸಮುದ್ರದಲಿ ೧೪

ಉದಯವಾಗದ ಮುನ್ನ ಕಳನೊಳು
ಹೊದರುಗಟ್ಟಿದರೀ ತ್ರಿಗರ್ತರು
ಕದನಕೆಮ್ಮೊಳಗಳವಿಗೊಡುವುದು ಬೇಗ ಬಹುದೆಂದು
ಮದವದರಿಭಟ ಭೈರವಂಗ
ಟ್ಟಿದರು ಭಟ್ಟರನವರು ಬಂದೊದ
ರಿದರು ಪಾರ್ಥನ ಮುಂದೆ ಸಮಸಪ್ತಕರ ಬಿರುದುಗಳ ೧೫

ಏಳು ಫಲುಗುಣ ಕೃಷ್ಣನೇ ಗೋ
ಪಾಲನೇಸರ ಮಾನಿಸನು ಬರ
ಹೇಳಲಾಪರೆ ಕರೆ ಸಹಾಯಕೆ ಭಾಳಲೋಚನನ
ಏಳು ಜಂಜಡವೇನು ಜೊತ್ತಿನ
ಕಾಳೆಗಕೆ ಕಲಿಯಾಗು ನಡೆಯೆನೆ
ಕೇಳುತರ್ಜುನನಿತ್ತನವರಿಗೆ ನಗುತ ವೀಳೆಯವ ೧೬

ನಡೆಯಿ ನೀವಾಹವಕೆ ಮೆಚ್ಚಿಸಿ
ಕೊಡುವೆನೀ ಬಹೆನೆಂದು ಮುರಹರ
ನೊಡನೆ ಮುದದಲಿ ರಥಕೆ ಬಂದನು ಬಿಲ್ಲನೊದರಿಸುತ
ನುಡಿದನಂತಕಸೂನು ಕಳಶಜ
ಹಿಡಿಯಲೆಂದೇರಿಸಿದ ನುಡಿ ತ
ನ್ನೊಡನೆ ನಿಂದಾವವನು ಕಾದುವ ಪಾರ್ಥ ಹೇಳೆಂದ ೧೭

ಕರಸಿದರೆ ಕಾಳೆಗದೊಳೆನಗೆಡೆ
ಮುರಿಯಬಾರದು ನಿಮ್ಮ ಕಾಹಿಂ
ಗಿರಲಿ ನೀಲನು ಸತ್ಯಜಿತು ಕೌಶಲ ಶತಾನೀಕ
ವರ ಘಟೋತ್ಕಚ ದ್ರುಪದ ಕೈಕೆಯ
ರಿರಲಿ ಪವನಜ ನಕುಲ ಸಹದೇವ
ವರಿಗೆ ದ್ರೋಣನ ಬವರವಾಗಲಿ ಎಂದನಾ ಪಾರ್ಥ ೧೮

ಎಂದು ಸಮಸಪ್ತಕರ ಮೋಹರ
ಕಂದು ತಿರುಗಿದ ಪಾರ್ಥನಿತ್ತಲು
ಸಂದಣಿಸಿತರಿ ರಾಯದಳ ಜಲರಾಸಿ ಜರಿವಂತೆ
ಮುಂದೆ ತವಕಿಗ ಭಟರ ತೆರಳಿಕೆ
ಯಿಂದ ಮೊರೆವ ಗಭೀರ ಭೇರಿಯ
ಮಂದರದ ಮುರಿಗಡಲ ಗಜರಿನೊಲೊದರಿತರಿಸೇನೆ ೧೯

ಬಳಿಯ ಸುಮಹಾರಥರ ರಾಜಾ
ವಳಿಯ ಚಮರಚ್ಛತ್ರ ಪಾಳಿಯ
ಸೆಳೆದಡಾಯುಧ ಹೆಗಲ ತೆಕ್ಕೆಯ ರಾಯ ರಾವುತರ
ಹೊಳೆವ ಹೇಮದ ರಥಕೆ ಹೂಡಿದ
ತಿಲಕಗುದುರೆಯ ನೆಗಹಿ ನಿಗುರುವ
ಕಳಶ ಸಿಂಧದ ದ್ರೋಣ ಹೊಕ್ಕನು ಕಾಳೆಗದ ಕಳನ ೨೦

ಗರುಡನಾಕಾರದಲಿ ಬಲವನು
ಸರಿಸ ಮಿಗೆ ಮೋಹಿದನು ವಿಹಗನ
ಶಿರಕೆ ಕೃಪ ಕುರುರಾಯ ದುಶ್ಶಾಸನನ ನಿಲಿಸಿದನು
ಕರೆದು ಭೂರಿಶ್ರವನ ಮಾದ್ರೇ
ಶ್ವರನ ಭಗದತ್ತನ ಸುಬಾಹುವ
ನಿರಿಸಿದನು ಬಲದೆರಕೆಯೊಳಗಕ್ಷೋಹಿಣೀ ಬಲವ ೨೧

ವಿಂದ್ಯನಶ್ವತ್ಥಾಮ ಕರ್ಣನ
ನಂದನರು ಕಾಂಭೋಜ ಕೌಶಲ
ಸಿಂಧು ನೃಪರಕ್ಷೋಹಿಣಿಯ ತಂದೆಡದ ಪಕ್ಕದಲಿ
ನಿಂದುದಲಾ ಮೋಹರದ ಜೋಕೆಯ
ಹಿಂದೆ ಲಕ್ಷ ಕಳಿಂಗ ಘಟೆಗಳು
ಸಂದಣಿಸಿದವು ದ್ರೋಣ ನಿಂದನು ಬಲದ ಕಾಹಿನಲಿ ೨೨

ಅರಿ ಬೊಬ್ಬಿರಿದಖಿಳ ಸೇನೆಯು
ಭೂರಿ ಭಟರಗ್ರದಲಿ ಕಟಕಾ
ಚಾರಿಯನು ಕೈವೀಸಿದನು ಬರಹೇಳು ಪವನಜನ
ವೀರನಾದಡೆ ದೊರೆಯ ಹೊಗ ಹೇ
ಳಾರು ತಡೆದರೆ ತಡೆಯಿ ಹಿಡಿವೆನು
ಧೀರ ಕೌರವನಾಣೆನುತ ಬೊಬ್ಬಿರಿದನಾ ದ್ರೋಣ ೨೩

ಕರಸಿ ಧೃಷ್ಟದ್ಯುಮ್ನ ನಿಜ ಮೋ
ಹರವ ರಚಿಸಿದನರ್ಧ ಚಂದ್ರೋ
ತ್ಕರ ವಿಳಾಸದೊಳಳ್ಳಿರಿವ ನಿಸ್ಸಾಳ ಕೋಟಿಗಳ
ಧುರಕೆ ನಿಗುರುವ ಭಟರ ತೂಳುವ
ಕರಿಘಟೆಯ ಕೆಲಬಲಕೆ ಸೂಸುವ
ತುರಗ ರಾಜಿಯ ತೇರ ಗಮನದ ಗಜರು ಘಾಡಿಸಿತು ೨೪

ಒದೆದುದಬುಧಿಯನಬುಧಿಯೆನೆ ಹೊ
ಕ್ಕುದು ಚತುರ್ಬಲ ಹೊಯ್ದು ತಲೆಯೊ
ತ್ತಿದುದು ಕೇಶಾಕೇಶಿ ಖಾಡಾಖಾಡಿಯಲಿ ಭಟರು
ಕೆದರಿತರಿಬಲ ಮತ್ತೆ ಹೊದರೆ
ದ್ದುದು ವಿಘಾತಿಯಲಳಿದು ಹುರಿ ಗೊಂ
ಡೊದಗಿ ಹಾಣಾಹಾಣಿಯಲಿ ಹೊಯ್ದಾಡಿತುಭಯಬಲ ೨೫

ಹಳಚುವಸಿಗಳ ಖಣಿಖಟಿಲು ಕಳ
ಕಳಕೆ ಮಿಗೆ ಹೊಯ್ದಾಡಿತುರುಳುವ
ತಲೆಯ ಬೀಳುವ ಹೆಣನ ಧಾರಿಡುವರುಣ ವಾರಿಗಳ
ತಳಿತ ಖಂಡದ ಹರಿದ ಕರುಳಿನ
ಕಳಚಿದೆಲುವಿನ ಕುಣಿವ ಮುಂಡದ
ಕೊಳಗುಳದ ಹೆಬ್ಬೆಳಸು ಹೆಚ್ಚಿಸಿತಂತಕನ ಪುರವ ೨೬

ಉಲಿದು ಸೂಠಿಯೊಳೇರಿದರು ವೆ
ಗ್ಗಳೆಯ ರಾವ್ತರು ಗಜರಿ ಮಸ್ತಕ
ಹಿಳಿಯಲಂಕುಶವಿಕ್ಕಿ ಬಿಟ್ಟರು ಸೊಕ್ಕಿದಾನೆಗಳ
ತಳಪಟವ ತುಂಬಿದವು ತೇರುಗ
ಳಿಳೆ ಜಡಿಯೆ ಕಾಲಾಳು ಹೊಕ್ಕೊಡೆ
ಗಲಿಸಿ ಹೊಯ್ದರು ಚೂಣಿಯರೆದುದು ಕಳನ ಚೌಕದಲಿ ೨೭

ಇತ್ತಲರ್ಜುನನಾ ತ್ರಿಗರ್ತರಿ
ಗಿತ್ತನವಸರವನು ಕೃತಾಂತನ
ತೆತ್ತಿಗರಿಗೌತನವ ಹೇಳಿಸಿದನು ಶರೌಘದಲಿ
ಕುತ್ತಿದವು ಕೂರಂಬು ದೊರೆಗಳ
ಮುತ್ತಿದವು ಕೆದರಿದವು ನಿಮಿಷಕೆ
ಬತ್ತಿಸಿದನಂದಹಿತ ಸುಭಟರ ವೀರ ಶರನಿಧಿಯ ೨೮

ಏನ ಹೇಳುವೆನಿತ್ತಲಾದುದು
ದಾನವಾಮರರದುಭುತಾಹವ
ವಾ ನಿರಂತರ ವಿಕ್ರಮೋನ್ನತ ಭಟರ ಬವರದಲಿ
ಆನಲಾರಿಗೆ ನೂಕುವುದು ತವ
ಸೂನುವಿನ ಸುಭಟರು ಪರಾಕ್ರಮ
ಹೀನರೇ ಧೃತರಾಷ್ಟ್ರ ಕೇಳೈ ದ್ರೋಣ ಸಂಗರವ ೨೯

ಬಿಲ್ಲನೊದರಿಸಿ ಕೆಲಬಲದ ಭಟ
ರೆಲ್ಲರಿಗೆ ಕೈವೀಸಿ ಚೌಪಟ
ಮಲ್ಲ ನುಡಿದನು ತನ್ನ ಸಾರಥಿಗಿತ್ತು ವೀಳೆಯವ
ಖುಲ್ಲ ರಿಪುಗಳ ಬಿಸುಟು ಹೊದರಿನ
ಹೊಳ್ಳುಗರನೊಡೆಹಾಯ್ಸಿ ಧರ್ಮಜ
ನೆಲ್ಲಿ ಮೋಹರದೆಗೆವನತ್ತಲೆ ರಥವ ಹರಿಸೆಂದ ೩೦

ರಥವ ಬಿಟ್ಟನು ಸೂಠಿಯಲಿ ನಿ
ರ್ಮಥಿತ ರಿಪುಗಳನಟ್ಟಿದನು ಭುಜ
ಶಿಥಿಲ ಸಾಹಸರೇನ ನಿಲುವರು ದ್ರೋಣನುರವಣೆಗೆ
ಪೃಥಿವಿ ನೆಗ್ಗಿತು ಹೊತ್ತ ಕಮಠನ
ವ್ಯಥೆಯನಾರುಸುರುವರು ಸುಮಹಾ
ರಥರ ಹೊದರಲಿ ಹೊಕ್ಕನುರಿ ಬಲು ಮೆಳೆಯ ಹೊಕ್ಕಂತೆ ೩೧

ಆಳ ಹೊಗಿಸೋ ದ್ರೋಣ ರಥ ದು
ವ್ವಾಳಿಯಲಿ ಬರುತದೆ ಕೃತಾಂತನ
ದಾಳಿಗೆತ್ತಣ ವೀರವೋ ನೆಗ್ಗಿದವು ನೆನಹುಗಳು
ಕಾಳುಗೆಡದಿರಿ ಕೂಡೆ ಕೈಕೊಳ
ಹೇಳಿ ಕೈ ತಪ್ಪಾಗದಿರದು ನೃ
ಪಾಲಕಂಗೆಂದೊದರಿದರು ಧರ್ಮಜನ ಮಂತ್ರಿಗಳು ೩೨

ಘಡ ಘಡಾನಿರುತಿರಲು ರಾಯನ
ಹಿಡಿದವವನ ಹೆಸರೇನು ರಿಪು ಭಟ
ನೊಡಲ ಹೊಳ್ಳಿಸಿ ನೆಣನನುಣಲಿಕ್ಕುವೆನು ದೈತ್ಯರಿಗೆ
ಬಿಡು ರಥವನಾ ದ್ರೋಣನಿದಿರಲಿ
ತಡೆಯೆನುತ ಸಾರಥಿಗೆ ಸೂಚಿಸಿ
ತುಡುಕಿದನು ಬಲುಬಿಲ್ಲ ಧೃಷ್ಟದ್ಯುಮ್ನನಿದಿರಾದ ೩೩

ಬಲ್ಲೆನೀತನ ಬಲುಹ ಸಾಕೀ
ಯೊಳ್ಳೆಗನನೆಡಕಿಕ್ಕಿ ಹಾಯಿಸು
ಕಲ್ಲೆಯಲಿ ಮುರಿನೂಕು ನಡೆ ಭೂಪತಿಯ ಸಮ್ಮುಖಕೆ
ನಿಲ್ಲದೊಡ್ಡೈಸೆನುತ ಸಾಹಸ
ಮಲ್ಲ ಸಾರಥಿಗರುಹೆ ಬಲವ
ಲ್ಲಲ್ಲಿ ಭಯಗೊಳೆ ದ್ರೋಣ ಹೊಕ್ಕನು ರಾಯಮೋಹರವ ೩೪

ಶಿವಶಿವಾ ಸಿಕ್ಕಿದನು ಸಿಕ್ಕಿದ
ನವನಿಪತಿಯೆನಲೌಂಕಿದರು ಗಜ
ನಿವಹವಗಿದಬ್ಬರಿಸೆ ಮುಂಕ್ಕುರುಕಿದವು ಕುದುರೆಗಳು
ತವಕದಲಿ ಬದ್ದರದ ಬಂಡಿಗ
ಳವುಚಿದವು ತಲೆವರಿಗೆಗಳಲಾ
ಹವವ ಹೊಕ್ಕುದು ಪಾಯದಳವಾಚಾರ್ಯನಿದಿರಿನಲಿ ೩೫

ಪಟುಗಳೋ ಮಝು ಪೂತು ಪಾಂಡವ
ಭಟರು ಖರೆಯುವಲಾ ಯುಧಿಷ್ಠಿರ
ನಟಮಟಿಸಿ ತಾ ಚುಕ್ಕಿಗಿಕ್ಕುವ ಲೆಕ್ಕ ಲೇಸಾಯ್ತು
ಕುಟಿಲತನದಲಿ ಗೆಲುವನೇ ಹುಲು
ಕುಟಿಗರಿವದಿರ ಹೊಯ್ದು ತನ್ನನು
ನಿಟಿಲಲೋಚನನಡ್ಡ ಹಾಯ್ದರೆ ಹಿಡಿವನೆನುತೆಚ್ಚ ೩೬

ನೂಕಿ ಹರಿತಹ ತೇಜಿಗಳ ಖುರ
ನಾಕ ಖಂಡಿಸಿ ಕವಿವ ನಾಗಾ
ನೀಕವನು ನೆರೆ ಕೆಡಹಿ ತೇರಿನ ಹೊದರ ಹರೆಗಡಿದು
ಔಕಿ ತಲೆವರಿಗೆಯಲಿ ತೆರಳಿದ
ನೇಕ ಸುಭಟರ ಸೀಳಿ ಜಯ ರ
ತ್ನಾಕರನು ಕಲಕಿದನು ಪಾಂಡವ ಸೈನ್ಯ ಸಾಗರವ ೩೭

ಬಲವ ಬರಿಕೈದೆವು ಯುಧಿಷ್ಠಿರ
ಬಿಲುದುಡುಕು ಸಾಕೋಡಿ ಬದುಕುವ
ಹುಲು ಪರೆಯತನ ಹೆಮ್ಮೆಯೇ ಕ್ಷತ್ರಿಯರ ಮಕ್ಕಳಿಗೆ
ಅಳಿದರಮರರಿಗೊಡೆಯನಹೆ ಮೇ
ಣುಳಿದಡವನೀಪಾಲನಹೆ ಯೀ
ಕಲಹವಿಹಪರಕೊಳ್ಳಿತೆಂದುರವಣಿಸಿದನು ದ್ರೋಣ ೩೮

ಫಡ ಫಡುರವಣೆ ಬೇಡ ತೆಗೆ ಬಾ
ಯ್ಬಡಿಕತನವಿದು ಗುರುವರಂಗವೆ
ಕಡುಹ ನಾಲಗೆಯರುಹಲೇತಕೆ ಕೈಯ ಧನುವಿರಲು
ಒಡನೆ ತಾನಿರುತಿರಲು ರಾಯನ
ಹಿಡಿವ ಭಟನೇ ನೀನೆನುತ ಬಿಲು
ದುಡುಕಿ ಮುಂದೆ ಶಿಖಂಡಿ ದ್ರೋಣನ ರಥಕೆ ಮಾರಾಂತ ೩೯

ಅಕಟ ಸಿಂಹಕೆ ಮಲೆತುದೋ ಜಂ
ಬುಕನು ನೋಡೈ ಸೂತ ಭೀಷ್ಮನ
ಶಕುತಿಗಂದಿದಿರಾದ ಮದದಲಿ ಮುಂದುಗಾಣನಿವ
ಚಕಿತ ಚಾಪ ಶಿಖಂಡಿ ನಿಲು ಸಾ
ಯಕದ ಮೊನೆಯಲಿ ಮಾತನಾಡುವು
ದುಕುತಿ ಚಾಪಳವೇಕೆನುತ ಕಣೆಗೆದರಿದನು ದ್ರೋಣ ೪೦

ಗುರುವಿನಂಬಿನ ಬಂಬಲನು ಕ
ತ್ತರಿಸಿ ಕೈದೋರಿದನು ದಿಗುತಟ
ಬಿರಿಯೆ ದಿಙ್ಮಯವಾದವಂಬುಗಳೇನನುಸುರುವೆನು
ಅರಿ ಶಿಖಂಡಿಯ ಕೈಚಳಕ ಕಾ
ಹುರವಲೇ ಲೇಸಾಯ್ತು ಬಿಲ್ಲಿನ
ಭರವಸಿಕೆಯುಹುದೆನುತ ಕೈಕೊಂಡೆಚ್ಚನಾ ದ್ರೋಣ ೪೧

ಸಾಕು ಷಂಡನ ಕೂಡೆ ಕಾದುವು
ದೇಕೆ ತಿದ್ದುವೆನೆನುತ ರಥವನು
ನಾಕು ಶರದಲಿ ಮುರಿದು ಸೂತನ ತಲೆಯನೆರಡರಲಿ
ನೂಕಿ ಧನುವನು ಮೂರು ಬಾಣದ
ಲೌಕಿ ಖಂಡಿಸಿ ಹೋಗು ಹೋಗಿ
ನ್ನಾಕೆವಾಳರನರಸಿ ತಾ ಎನುತೈದಿದನು ದ್ರೋಣ ೪೨

ಎಲೆ ಯುಧಿಷ್ಠಿರ ಬಿಲ್ಲ ಹಿಡಿ ನರ
ಹುಳುಗಳಿವದಿರ ಕವಿಸಿ ಕಾಲವ
ಕೊಲುವುದೇ ಸಾಕಿನ್ನು ಕೈವಶವಾದೆ ನಿಲ್ಲೆನುತ
ಅಳವಿಗಿಟ್ಟಣಿಸಲು ಶರಾಳಿಯ
ತುಳುಕಿ ಹೊಕ್ಕನು ಸತ್ಯಜಿತು ದಳ
ವುಳಿಸಿದರು ಚಿತ್ರ ಶತಾನೀಕಾದಿ ನಾಯಕರು ೪೩

ಬರಿಯ ಕಾರ್ಪಣ್ಯದಲಿ ಮೇಘದ
ಮರೆಯ ಹೊಕ್ಕರೆ ರಾಹು ಬಿಡುವನೆ
ಉರಿವ ರವಿಮಂಡಲವನೆಲೆ ಕುಂತೀ ಕುಮಾರಕನೆ
ಇರಿದು ಮೆರೆವುದು ಮಹಿಮೆಯನು ಕೈ
ಮರೆಯದಿರು ಮೈಮಾರಿಗಳ ಮು
ಕ್ಕುರಿಕಿದಿವದಿರ ತಿದ್ದಿ ಬಹೆನಿದೆಯೆನುತ ತೆಗೆದೆಚ್ಚ ೪೪

ಏನು ತರಹರಿಸುವುದು ತಿಮಿರವು
ಭಾನುರಶ್ಮಿಯ ಮುಂದೆ ದ್ರೋಣನ
ನೂನ ಶರವರ್ಷದಲಿ ನಾದವು ಸುಭಟರೊಡಲುಗಳು
ಆ ನಿರಂತರ ನಿಶಿತ ಶರ ಸಂ
ಧಾನಕಿವದಿರು ಲಕ್ಷ್ಯವೇ ನಿ
ನ್ನಾನೆಗಳಿಗಿದಿರಾವನೈ ಧೃತರಾಷ್ಟ್ರ ಕೇಳೆಂದ ೪೫

ಕೋಲಿಗೊಬ್ಬರ ಕೆಡಹಿದನು ಪಾಂ
ಚಾಲ ಬಲದಲಿ ಸತ್ಯಜಿತುವನು
ಮೇಲಣಾಹವದೊಳು ಶತಾನೀಕ ಕ್ಷಿತೀಶ್ವರನ
ಸೀಳಿದನು ಮಿಡುಕುವ ಮಹಾರಥ
ರೇಳು ನೂರನು ತುರಗ ಗಜ ಕಾ
ಲಾಳನಳಿದುದನಾವನೆಣಿಸುವನಹಿತ ಸೇನೆಯಲಿ ೪೬

ಹೊಳ್ಳುಗಳ ತೂರಿದೆವು ಹಿಡಿ ಹಿಡಿ
ಬಿಲ್ಲ ಸುರಿ ಸುರಿ ಶರವನಕಟಿ
ನ್ನೆಲ್ಲಿ ಹೊಗುವೈ ಕಂದ ಕುಂತಿಯ ಜಠರವಲ್ಲವಲೆ
ನಿಲ್ಲುನಿಲ್ಲೆನುತೈದಿ ಬರಲ
ಲ್ಲಲ್ಲಿ ಮುರುಗಿತು ಸೇನೆ ಸಾಹಸ
ಮಲ್ಲನಡಹಾಯಿದನು ದ್ರುಪದನು ಧನುವನೊದರಿಸುತ ೪೭

ರಾಯನಾಪತ್ತಿಂದ ಮುನ್ನವೆ
ಸಾಯಬೇಹುದು ತನಗೆನುತಲಡ
ಹಾಯಿದನು ಕಲಿ ಮತ್ಸ್ಯನೃಪ ನಿಜಬಂಧುಗಳ ಸಹಿತ
ನೋಯಬೇಹುದು ಮುನ್ನ ತಾವೆನು
ತಾಯತಿಕೆಯಲಿ ಪಂಚ ಕೈಕೆಯ
ರಾಯುಧದ ಬೆಳಗಳ್ಳಿರಿಯೆ ನೂಕಿದರು ತೇರುಗಳ ೪೮

ತಲೆಗೆ ಕೊಂಡೆವು ಹಣವನಿನ್ನಿದ
ನುಳುಹಿಕೊಂಡಿರಲಾಗದೆಂದಿ
ಟ್ಟಳಿಸಿ ಹೊಕ್ಕುದು ಯವನ ಸಂವೀರರು ಸುಷೇಣಕರು
ಅಳವಿಗಳುಕುವುದಾಳುತನದ
ಗ್ಗಳಿಕೆಯೇ ಸುಡಲೆನುತ ಮನ ಮುಂ
ಕೊಳಿಸಿ ಕುಂತೀಭೋಜ ಹೊಕ್ಕ ಸಕಲದಳ ಸಹಿತ ೪೯

ಹರೆದ ಬಲವೊಗ್ಗಾಯ್ತು ರಾಯನ
ನುರವಣಿಸಲೀಯದೆ ನೃಪಾಲಕ
ರುರುಬಿದರು ತರುಬಿದರು ಪರಬಲ ಕಾಲಭೈರವನ
ಹೊರಳಿಯೊಡೆಯದೆ ಭಾರಣೆಯಲೊ
ತ್ತರಿಸಿ ಕಲ್ಪದ ಕಡೆಯ ಕಡಲಿನ
ಗರುವಿಕೆಯ ಗಾಢದಲಿ ನಡೆದರು ತಡೆದರರಿಭಟರ ೫೦

ತೊಲಗು ವಿಪ್ರಾಧಮ ಸುಯೋಧನ
ಬಲದೊಳಗೆ ಬಹು ಭಾಷೆತನದಲಿ
ಗಳಹಿ ಬಂದರೆ ಹಿಡಿಯ ಬಲ್ಲೈ ಧರ್ಮನಂದನನ
ಗಳದ ಸತ್ವವನರಿಯದದ್ರಿಗೆ
ತಲೆಯನೊಡ್ಡುವರೇ ವೃಥಾ ಕಳ
ಕಳಿಸಿ ನುಡಿವರೆ ಮಾನ್ಯರೆನುತಿದಿರಾದನಾ ದ್ರುಪದ ೫೧

ದಿಟ್ಟನಹೆಯೋ ದ್ರುಪದ ಹಾ ಜಗ
ಜಟ್ಟಿಗಳಿಗುಪಹಾಸ್ಯವೇ ಗರಿ
ಗಟ್ಟಿದಿರಿ ನೀವ್ ಹಿಡಿಯಲೀವಿರೆ ಧರ್ಮನಂದನನ
ತೊಟ್ಟ ಜೋಹಕೆ ತಕ್ಕ ನುಡಿಗಳ
ಬಿಟ್ಟೆವಲ್ಲದೆ ನಿಮ್ಮ ರಾಯನ
ಕಟ್ಟಲಾಪೆವೆ ಎನುತ ಕರೆದನು ಸರಳ ಸರಿವಳೆಯ ೫೨

ದರ್ಪದಾಭರಣಕ್ಕೆ ಸೂಸಿದ
ವೊಪ್ಪ ಸಲಿಗೆಗಳೆನಲು ಗರಿಗಳು
ಚಪ್ಪರಿಸಿ ತುರುಗಿದುವು ರಿಪುಸೇನಾಸಮುದ್ರದಲಿ
ಹಿಪ್ಪೆಗರ ಹರಗಡಿದು ಹೊಗರಲ
ಗೊಪ್ಪಿದವು ಕರುಳುಗಳ ನಿಮಿಷದೊ
ಳೊಪ್ಪಗೆಡಿಸಿದವರಿ ಕದಂಬವನೀತನಂಬುಗಳು ೫೩

ಮರುಳೆ ಮಂಜಿನ ಮಳೆಗೆ ಕುಲಗಿರಿ
ಕರಗುವುದೆ ನೀನೆಚ್ಚ ಶರ ಪಂ
ಜರಕೆ ಸಿಲುಕುವ ವೀರರೇ ಪಾಂಡವ ಮಹಾರಥರು
ಕೊರಳ ರಕ್ಷಿಸಿಕೊಳ್ಳೆನುತ ಚ
ಪ್ಪರಿಸಿ ದ್ರುಪದ ವಿರಾಟರೆಚ್ಚರು
ಸರಳ ರಶ್ಮಿಯ ಮಾಲೆ ಮುಕ್ಕುರುಕಿದುವು ದಿಗುತಟವ ೫೪

ಗಿರಿಯ ಮಕ್ಕಳು ನೆರೆದು ವಜ್ರವ
ಸರಸವಾಡುವ ಕಾಲವಾಯಿತೆ
ಹರಹರತಿ ವಿಸ್ಮಯವೆನುತ ಹೊಗರೇರಿ ಖತಿ ಮಸಗಿ
ತಿರುವ ಕಾರಿಸಿದನು ಕಠೋರದ
ಪೊರಹುಗಳ ಬಾಯ್ಧಾರೆಗಳ ಕಿಡಿ
ಹೊರಳಿಗಳ ಹೊಗರಂಬು ಹೊಕ್ಕವು ಪಾಂಡು ಸೈನ್ಯದಲಿ ೫೫

ವರರ ಕಡಿಯಾನೆಗಳ ಕಡಿಯಲಿ
ಬೆರಸಿದವು ತೇಜಿಗಳ ಕರುಳಲಿ
ಕರಿ ಘಟೆಯ ಕರುಳುಗಳು ತೊಡಕಿದವುಡಿದ ತೇರುಗಳು
ಜರಿದ ಜೋಡಿನೊಳೊಂದಿದವು ಕ
ತ್ತರಿಸಿದಾಯುಧ ಕಡಿದ ಸಿಂಧದ
ಹೊರಳಿಯಲಿ ಹೂಳಿದವು ನಿಮಿಷಕೆ ಪಾಂಡು ಸೇನೆಯಲಿ ೫೬

ನೊರೆ ರಕುತ ಸುಳಿ ಮಸಗಿ ಮಿದುಳಿನ
ಹೊರಳಿಗಳೆದುಬ್ಬಣದ ನೆಣ ವಸೆ
ದೊರಳೆಗಳ ಮೆದಕುಗಳ ಮೂಳೆಯ ಬಸಿವ ಬಲು ಜಿಗಿಯ
ಕರುಳ ಬಂಬಲು ಖಂಡಧಿಂಡೆಯ
ತುರುಗಿದೆಲುವಿನ ತಳಿತ ಚರ್ಮದ
ಶಿರದ ತಡಿಗಳಲಡಸಿ ಹರಿದುದು ವೈರಿಸೇನೆಯಲಿ ೫೭

ಕೂಡೆ ತಳಪಟವಾಯ್ತು ಸುಭಟರ
ಜೋಡಿ ಜರಿದುದು ಕೌರವೇಂದ್ರಗೆ
ಖೋಡಿಯುಂಟೇ ದ್ರೋಣ ಕೇಣವ ಬಿಟ್ಟು ಕಾದುವರೆ
ಖೇಡತನ ಬಿಗುಹಾಯ್ತು ಮೆಯ್ಯಲಿ
ಮೂಡಿದವು ಹೊಗರಂಬುಗಳು ತೆಗೆ
ದೋಡಿದವು ತೆಕ್ಕೆಯಲಿ ಪಾಂಡವ ನೃಪ ಮಹಾರಥರು ೫೮

ಘಾಯವಡೆದನು ದ್ರುಪದ ಮತ್ಸ್ಯನ
ಬಾಯೊಳೊಕ್ಕುದು ರಕುತ ಕೈಕೆಯ
ರಾಯುಧಂಗಳನೊಪ್ಪಿಸಿದರಿಳಿದೋಡಿದರು ರಥವ
ಸಾಯಲಾದನು ಧೃಷ್ಟಕೇತು ವಿ
ಡಾಯಿಗೆಟ್ಟನು ಭೋಜನಿತ್ತಲು
ರಾಯನಲ್ಲಿಗೆ ರಥವ ದುವ್ವಾಳಿಸಿದನಾ ದ್ರೋಣ ೫೯

ತೀರಿತಿನ್ನೇನರಿ ನೃಪನ ಸಂ
ಸಾರವಿನ್ನರೆ ಘಳಿಗೆಯಲಿ ಗಾಂ
ಧಾರಿ ನೆರೆ ನೋಂಪಿಯಲಿ ಪಡೆದಳು ಕೌರವೇಶ್ವರನ
ಸಾರ ಹೇಳೋ ಸಾಹಸಿಕರೆಂ
ದಾರುತಿರೆ ಬಲವಿತ್ತಲಾಹವ
ಧೀರ ಸಾತ್ಯಕಿ ಭೀಮ ಪಾರ್ಥ ಕುಮಾರರನುವಾಯ್ತು ೬೦

ಗೆಲಿದನೈ ಮರುಳು ಪೂತು ದ್ರೋಣನ
ಬಲುಹು ಭರ್ಗನ ಸರಿ ಯುಧಿಷ್ಠಿರ
ಸಿಲುಕಿದನಲಾ ಶಿವಶಿವಾ ಕಲಿಕರ್ಣ ನೋಡೆನುತ
ಉಲಿವ ದುರಿಯೋಧನನನೀಕ್ಷಿಸು
ತಲಘು ಭುಜಬಲ ಭಾನು ನಂದನ
ನಳುಕದೀ ಮಾತುಗಳನೆಂದನು ನೀತಿಸಮ್ಮತವ ೬೧

ಗೆಲವು ನಮಗೆಲ್ಲಿಯದು ಧರ್ಮಜ
ಸಿಲುಕುವುದು ತಾನಿಲ್ಲ ಕೃಷ್ಣನ
ನೆಳಲು ದಿಟವುಂಟಾದೊಡೊಳಗಾಗರು ವಿರೋಧಿಗಳು
ನೆಲನ ತಿಣ್ಣವ ತಿದ್ದಲೋಸುಗ
ಸುಳಿದನರಿಯಾ ಕೃಷ್ಣನೀತನ
ಬಲದವರಿಗೆಂತಹುದು ಬಾಧೆಗಳೆಂದನಾ ಕರ್ಣ ೬೨

ಗಿರಿಯ ಕೊರಳಿಗೆ ವಜ್ರಮಣಿಯಾ
ಭರಣವೇ ದಳ್ಳುರಿಯ ಜೋಡುಗ
ಳರಗಿನೋಲೆಯಕಾರರಿಗೆ ಸುಯಿಧಾನವೇ ನೃಪತಿ
ವರ ತಿಮಿರ ರಾಜಂಗೆ ಮಂಗಳ
ಕರವೆ ಆ ರವಿ ಕೃಷ್ಣ ಭಕ್ತರ
ಪರಿಭವವು ಜೀವರಿಗೆ ಪಥ್ಯವೆ ಎಂದನಾ ಕರ್ಣ ೬೩

ಇರಲಿ ಮೇಣ್ ದೂರದಲಿ ಹತ್ತಿರೆ
ಯಿರಲಿ ತನ್ನವರೆಂದರತ್ತಲೆ
ಹರಹಿಕೊಂಬನು ಕೃಷ್ಣನದು ತನಗೇರಿಸಿದ ಬಿರುದು
ಹರಿ ಸಮೀಪದೊಳಿಲ್ಲ ದ್ರೋಣಂ
ಗರಸ ಸಿಲುಕಿದನೆಂದು ಬಗೆದೈ
ಮುರುಳೆ ಮುರವೈರಿಯ ಕಟಾಕ್ಷದ ಕಾಹು ಘನವೆಂದ ೧೪

ಆ ಹದನದಂತಿರಲಿ ನಮ್ಮ
ಯಾಹವಕೆ ಕಲಿ ಭೀಮ ಸಾತ್ಯಕಿ
ರೂಹುದೋರಿದರದೆ ಘಟೋತ್ಕಚ ಪಾರ್ಥಸುತರೊಡನೆ
ಸಾಹಸಿಕರೊಗ್ಗಾಯ್ತು ದ್ರೋಣಂ
ಗೀ ಹದನು ಭಾರಾಂಕವೀಗಳೆ
ಬೇಹ ಸುಭಟರ ಕಳುಹು ಕಾಳೆಗಕೆಂದನಾ ಕರ್ಣ ೧೫

ಎನಲು ನೂಕಿದನರಸ ದುಶ್ಶಾ
ಸನ ಜಯದ್ರಥನಿನತನುಜ ಗುರು
ತನುಜ ಕೃಪ ಮಾದ್ರೇಶ ಭಗದತ್ತಾದಿಗಳು ಸಹಿತ
ತನತನಗೆ ನಾಯಕರು ದ್ರೋಣನ
ಮೊನೆಯಬಲಿದರು ಹಿಡಿ ಯುಧಿಷ್ಠಿರ
ಜನಪತಿಯನೆನುತುರುಬಿದರು ತರುಬಿದರು ಪರಬಲವ ೧೬

ಫಡಫಡಾರೋ ಧರ್ಮಪುತ್ರನ
ಹಿಡಿವವರು ಬಾಯ್ಬಡಿಕರೈ ಕಾ
ಳ್ಗಡೆದಡೇನಹುದೆನುತ ಹೊಕ್ಕನು ಭೀಮನುರವಣಿಸಿ
ಕಡಲ ಕಡುಹಿನ ಬಹಳ ಲಹರಿಯ
ನೊಡೆಮುರಿವ ಮಂದರದವೋಲವ
ಗಡಿಸಿ ಹೊಕ್ಕನು ಗದೆಯ ಘಾಡದ ಹೊದರ ಹೊಯ್ಲಿನಲಿ ೧೭

ಗದೆಯ ಘಾತಾಘಾತಿಕಾರನ
ನಿದಿರುಗೊಂಡುದು ದೆಸೆದೆಸೆಗೆ ಹ
ಬ್ಬಿದುದು ಬಲನೆಡಚೋಡು ಬಲು ಭಾರಣೆಯ ಪಟುಭಟರು
ಮದಗಜದ ನಿಡುವರಿಯ ತೇರಿನ
ಕುದುರೆಕಾರರ ಕಾಹಿನಲಿ ಕೊ
ಬ್ಬಿದುದು ನಿಬ್ಬರವಾಗಿ ಬಹುವಿಧ ವಾದ್ಯ ನಿರ್ಘೋಷ ೧೮

ತೆತ್ತಿಗರ ಬರಹೇಳು ಭೀಮಂ
ಗೆತ್ತಣದು ಜಯುವೆನುತ ಸುಭಟರು
ಮುತ್ತಿಕೊಂಡರು ಮುಸುಕಿದರು ಮೆತ್ತಿದರು ಸರಳುಗಳ
ಕತ್ತಲೆಯ ಹೇರಾಸಿ ಸೂರ್ಯನ
ನೊತ್ತಿ ತಹ ದಿನವಾಯ್ತಲಾ ಎನು
ತತ್ತಲಿತ್ತಲು ಮುರಿದು ತಳಪಟ ಮಾಡಿದನು ಭೀಮ ೧೯

ಒಂದು ಕಡೆಯಲಿ ಭೀಮ ಸವರಿದ
ನೊಂದು ದೆಸೆಯಲಿ ಸಾತ್ಯಕಿಯ ಶರ
ವೊಂದು ಕಡೆಯಲಿ ಪಾರ್ಥನಂದನ ಭೀಮನಂದನರು
ಒಂದು ಕಡೆಯಲಿ ನಕುಲ ಪಾಂಡವ
ನಂದನರು ಮತ್ತೊಂದು ದೆಸೆಯಲಿ
ಮುಂದುವರಿದರು ಮುರಿದರರಿಗಳ ಹೊದರ ಹೊಸ ಮೆಳೆಯ ೨೦

ಥಟ್ಟು ನುಗ್ಗಾಯಿತು ವಿರೋಧಿಗೆ
ಲಟ್ಟಣಿಸುತಿದೆ ದ್ರೋಣನೊಬ್ಬನ
ಬಿಟ್ಟು ನೋಡುವುದುಚಿತವಲ್ಲೆನುತೆಡಬಲನ ನೋಡಿ
ಬಿಟ್ಟನಾಹವಕಹಿತಬಲ ಜಗ
ಜಟ್ಟಿ ಕೌರವ ನೃಪತಿ ರಥವನು
ಹೊಟ್ಟುಗರ ತೆಗೆ ಹೋಗ ಹೇಳೆಂದೆಚ್ಚನತಿರಥರ ೨೧

ಮಗನ ತೆಗೆಯೋ ಸಾತ್ಯಕಿಯ ಹೆರ
ತೆಗೆಯ ಹೇಳೋ ಬೇಡ ನಕುಲಾ
ದಿಗಳ ನೂಕಭಿಮನ್ಯುವನು ಹಿಮ್ಮೆಟ್ಟ ಹೇಳೆನುತ
ಮೊಗದ ಹೊಗರಿನ ಕೆಂಪನುಗುಳ್ವಾ
ಲಿಗಳ ದಂತದಲೌಕಿದಧರದ
ಬಿಗಿದ ಹುಬ್ಬಿನ ಭೀಮ ಹೊಕ್ಕನು ಗದೆಯ ತಿರುಗಿಸುತ ೨೨

ಸಿಲುಕಿದನು ಶಿವಿ ಸ್ವಾಮಿದ್ರೋಹನ
ಗಳದ ರಕುತಕೆ ಬಾಯನೊಡ್ಡೆನು
ತಳವಿಯಲಿ ಹೊಕ್ಕೊಕ್ಕಲಿಕ್ಕಿದನಾನೆ ಕುದುರೆಗಳ
ಎಲೆ ದುರಾತ್ಮ ದ್ಯೂತಕೇಳೀ
ಕಲಹಲಂಪಟ ನಿಲ್ಲು ನಿಲ್ಲೆನು
ತೊಳಗುವರಿದಪ್ಪಳಿಸಿದನು ದುರ್ಯೋಧನನ ರಥವ ೨೩

ತೋಳನಳವಿಗೆ ಸಿಕ್ಕಿತೋ ಮೃಗ
ಜಾಲ ಶಿವಶಿವ ದಿವಿಜ ವಧುಗಳ
ತೋಳ ತೆಕ್ಕೆಗೆ ಒಡಲನಿತ್ತನು ರಾಯನಕಟೆನುತ
ಆಳು ಮಿಗೆ ಕಳವಳಿಸೆ ಕುರುಭೂ
ಪಾಲಕನ ಹಿಂದಿಕ್ಕಿ ಕಿವಿಗಡಿ
ಗೋಲ ತೆಗಹಿನೊಳೊದಗಿದರು ದುಶ್ಶಾಸನಾದಿಗಳು ೨೪

ವರ ವಿಕರ್ಣ ಸುಲೋಚನನು ದು
ರ್ಮರುಷಣನು ದುಶ್ಶಾಸನನು ಸಂ
ಗರವ ಕೆಣಕಿದರನಿಲಸುತನೊಳು ನೃಪನ ಹರಿಬದಲಿ
ನೆರೆದ ನುಸಿಗಳು ಗಿರಿಯ ಕಾಡುವ
ಸರಿಯ ನೋಡೈ ಪೂತುರೆನುತು
ಬ್ಬರಿಸಿ ಕೈದೋರಿದನು ಕಲಿ ಪವಮಾನಸುತ ನಗುತ ೨೫

ಎಚ್ಚ ಶರವನು ಗದೆಯಲಣೆದಿಡು
ಗಿಚ್ಚು ಹೊಕ್ಕಂದದಲಿ ರಥವನು
ಬಿಚ್ಚಿ ಬಿಸುಟನು ಸಾರಥಿಯನಾ ಹಯವನಾ ಧನುವ
ಕೊಚ್ಚಿದನು ಕೊಲೆಗಡಿಗನಿದಿರಲಿ
ಕೆಚ್ಚು ಮನದವರಾರು ಸೋಲವಿ
ದೊಚ್ಚತವಲೇ ನಿಮ್ಮ ಸೇನೆಗೆ ಭೂಪ ಕೇಳೆಂದ ೨೬

ಸರಿದರೀ ನಾಲುವರು ರಾಯನ
ಮರಳಲೀಯದೆ ಮತ್ತೆ ಮಾರುತಿ
ಹರಿಸಿದನು ನಿಜರಥವನತಿರಥರೊಡ್ಡು ಲಟಕಟಿಸೆ
ದೊರೆಯ ತೆಗೆಯೋ ನೂಕು ನೂಕಲಿ
ಕರಿಘಟೆಯನೆನೆ ಮುಗಿಲ ಮೋಹರ
ಧರೆಗೆ ತಿರುಗಿದವೆನಲು ಜೋಡಿಸಿದರು ಗಜವ್ರಜವ ೨೭

ವಂಗನಂಬಟ್ಟನು ವರಾಳ ಕ
ಳಿಂಗ ಬರ್ಬರರಾನೆಗಳ ಥ
ಟ್ಟಿಂಗೆ ಕೈವೀಸಿದರು ಕೊಂಡರು ನಾಳಿವಿಲ್ಲುಗಳ
ವಂಗಡದಲೆಂಬತ್ತು ಸಾವಿರ
ತುಂಗ ಗಜಘಟೆ ಕವಿದವಿದಕಿ
ನ್ನಂಗವಿಸುವವರಾರೆನುತ ಗಜಬಜಿಸಿತರಿಸೇನೆ ೭೮

ಆಳ ಹೆದರಿಸಿ ನುಡಿವ ನಾಯ್ಗಳ
ಬೀಳ ಬಡಿ ಬಡಬಾಗ್ನಿ ನೊರಜಿನ
ದಾಳಿಗಳುಕುವುದುಂಟೆ ಫಡ ಫಡಯೆನುತ ಬೊಬ್ಬಿರಿದ
ಕಾಲ ದಂಡವ ತಿರುಹಿ ಭುವನದ
ಲೂಳಿಗವ ಮಾಡುವ ಕೃತಾಂತನ
ಹೋಲುವೆಯ ಹೊಸಬಿಗನು ಹೊಕ್ಕನು ಭೀಮನುರವಣಿಸಿ ೭೯

ಗದೆಯಲಪ್ಪಳಿಸಿದನು ಕೋದಂ
ಡದಲಿ ಕಾದಿದ ಮುದ್ಗರದಲೊರ
ಸಿದನು ಲೌಡಿಯಲರೆದನುರೆ ತರಿದನು ಕೃಪಾಣದಲಿ
ಒದೆದು ಕೆಲವನು ಮುಷ್ಟಿಯಲಿ ಮೋ
ದಿದನು ಕೆಲವನು ನಿಖಿಳ ಶಸ್ತ್ರಾ
ಸ್ತ್ರದಲಿ ಕಾದಿದನನಿಲಸುತನಿಭಬಲವ ಬರಿಕೈದು ೮೦

ಗಿಳಿಯ ಹಿಂಡುಗಳೆತ್ತ ಗಿಡಿಗನ
ದಳದುಳವು ತಾನೆತ್ತ ಭೀಮನ
ಸುಳಿವು ಗಡ ಕಾಲೂರುವವೆ ಕರಿ ಘಟೆಗಳೊಗ್ಗಿನಲಿ
ಕಳಿತ ಹೂವಿನ ತೊಡಬೆಗಳೊ ರಿಪು
ಬಲವೊ ಬಿರುಗಾಳಿಯೊ ವೃಕೋದರ
ನಳವ ಬಲ್ಲವನಾವನೈ ಧೃತರಾಷ್ಟ್ರ ಕೇಳೆಂದ ೮೧

ಹೋಯಿತಾ ಮಾತೇಕೆ ಗಜದಳ
ಮಾಯವಾದುದು ವಂಗ ಭೂಪನ
ಬಾಯೊಳಗೆ ಬೆಟ್ಟಿದನು ಗದೆಯನು ಮಿಕ್ಕ ನಾಲ್ವರನು
ಸಾಯ ಬಡಿದನು ಮುಂದೆ ಕೌರವ
ರಾಯನನು ತಾಗಿದನು ಭೀಮನ
ದಾಯ ಬಂದುದು ಸಕಲ ಕುರು ತಳತಂತ್ರ ತಲ್ಲಣಿಸೆ ೮೨

ಮೂರನೆಯ ಸಂಧಿ

ಸೂ. ಹನುಮನನುಜನ ಬಾಹುಬಲ ರಿಪು
ವನಧಿಯನು ತುಳುಕಿದನು ಭಗದ
ತ್ತನನು ಮರ್ದಿಸಿ ಮುರಿದನರ್ಜುನ ಸುಪ್ರತೀಕವನು

ಗುರುಗಳಾಡಿದ ಭಾಷೆ ಪರಬಲ
ದರಸ ಕಟ್ಟುವದದು ನಿಲಲಿ ನ
ಮ್ಮರಸ ಸಿಲುಕಿದ ಭೀಮ ಗಜ ಕಟ್ಟಿದುದು ಬೀದಿಗಳ
ತಿರುಗಲಾಪರೆ ಸಮಯವಿದು ಸಂ
ಗರ ಸಮರ್ಥರು ಬರಲಿ ಯೆಂಬ
ಬ್ಬರದೊಳಗೆ ಭಗದತ್ತ ಮೇಳೈಸಿದನು ನಿಜಗಜವ ೧

ಬಲವೊರಜೆ ಎಡವೊರಜೆ ಬೆನ್ನಿನ
ಮಿಳಿಯ ಜಾಳಿಗೆವೊರಜೆ ತಳ ಸಂ
ಕಲೆಯ ತೊಡರಂಕಣಿಯ ಕೊಂಡೆಯ ಪಕ್ಕ ಗಂಟೆಗಳ
ತುಳುಕಿನುಗ್ಗಡಣೆಗಳ ಹಿಣಿಲಿನ
ಬಲುವೊರಜೆಗಳ ಬಾರ ಸಂಕಲೆ
ಗಳನು ಬಿಗಿದರು ಜೋಡಿಸಿದರುಬ್ಬರದ ಮದಗಜವ ೨

ಬಿಗಿದು ಗಳವತ್ತಿಗೆಯನೆದೆವ
ತ್ತಿಗೆಯ ಘನಮುಂಡಿಗೆಯ ಲೌಡಿಯ
ಬಿಗಿದು ಗುಳ ರೆಂಚೆಗಳ ಭಾರಿಯ ಕೈಯ ಪಟ್ಟೆಯವ
ಅಗಿವ ಬಡಿಗೆಯನಂಕುಶದ ಕ
ಟ್ಟಿಗೆಯ ಧಾರೆಯ ಕಮಳದಳ ಕೊಡ
ತಿಗಳ ಕೈಹಾರೆಗಳನಳವಡಿಸಿದರು ವಹಿಲದಲಿ ೩

ಮುಗಿಲ ಹೊದರಿನೊಳೆಳೆಯ ರವಿ ರ
ಶ್ಮಿಗಳು ಪಸರಿಸುವಂತೆ ಸುತ್ತಲು
ಬಿಗಿದ ಗುಳದಲಿ ಹೊಳೆಯೆ ಹೊಂಗೆಲಸದ ಸುರೇಖೆಗಳು
ಗಗನ ಗಂಗಾ ನದಿಯ ಕಾಲುವೆ
ತೆಗೆದರೆನೆ ಠೆಕ್ಕೆಯದ ಪಲ್ಲವ
ವಗಿಯೆ ಮೆರೆದುದು ಬಿಗಿದ ಮೊಗರಂಬದ ವಿಳಾಸದಲಿ ೪

ಗಗನ ತಳವನು ಬಿಗಿದ ಬಲು ರೆಂ
ಚೆಗಳ ತುಂಬಿದ ಹೊದೆಯ ಕಣೆಗಳ
ಬಿಗಿದ ನಾಳಿಯ ಬಿಲ್ಲುಗಳ ತೆತ್ತಿಸಿದ ಸೂನಿಗೆಯ
ಉಗಿವ ಸರಿನೇಣುಗಳ ಕೈ ಗುಂ
ಡುಗಳ ಕವಣೆಯ ಲೌಡಿ ಕರವಾ
ಳುಗಳ ಜೋಡಿಸಿ ಜೋದರಡರಿದರಂದು ಬೊಬ್ಬಿರಿದು ೫

ಸುತ್ತ ಮೆರೆದವು ಮೇಲೆ ಪಲ್ಲವ
ಸತ್ತಿಗೆಯ ಸಾಲುಗಳು ಬಿರುದಿನ
ಕತ್ತರಿಯ ಹೀಲಿಗಳ ಝಲ್ಲರಿ ಮುಸುಕಿದವು ಗಜವ
ಒತ್ತಿ ಕಿವಿಗಳನೊದೆದು ಶಿರದಲಿ
ತೆತ್ತಿಸಿದರಂಕುಶವನಾ ಭಗ
ದತ್ತ ದಂತಿಯನೇರಿದನು ಜಯರವದ ರಭಸದಲಿ ೬

ಕಾಲುಗಾಹಿನ ಕುದುರೆಗಳ ಕಾ
ಲಾಳ ಕೈವಾರಿಗಳ ಸಬಳದ
ಸೂಲಿಗೆಯ ತೇರುಗಳ ಹರಹಿನ ಹೊಂತಕಾರಿಗಳ
ಆಳ ಬಲು ಬೊಬ್ಬೆಯಲಿ ಘನ ನಿ
ಸ್ಸಾಳತತಿ ಮೊಳಗಿದವು ಡೌಡೆಯ
ತೂಳುವರೆಗಳು ಗಜರಿದವು ತಂಬಟದ ಲಗ್ಗೆಯಲಿ ೭

ಸುರಪ ಕಡಿಯಲು ಕೆರಳಿ ಕುಲಗಿರಿ
ಯುರಿಯನುಗುಳುವುದೆನಲು ದಾಡೆಗ
ಳರುಣಮಯ ರಶ್ಮಿಗಳ ಪಸರದಲೆಸೆದುದಿಭಪತಿಯ
ಧರಣಿಯಳತೆಯ ಹರಿಯ ನೆಗಹಿನ
ಚರಣದಗ್ರದೊಳಿಳಿವ ಘನ ನಿ
ರ್ಝರದವೊಲು ಮದಧಾರೆ ಮೆರೆದುದು ಕರಿಕಪೋಲದಲಿ ೮

ಜಗದ ನಿಡುನಿದ್ರೆಯಲಿ ಮೋಹರ
ದೆಗೆದ ಮುಗಿಲೋ ಮೇಣಖಿಳ ಕುಲ
ದಿಗಿಭವೆಂಟೊಂದಾಯ್ತೊ ಕೈ ಕಾಲ್ ಮೂಡಿತೋ ನಭಕೆ
ಅಗಿದು ಮೆಟ್ಟಿದಡವನಿ ಪಡುವಲು
ನೆಗೆದುದಡರಿದು ಮುಂದೆ ಮೆಟ್ಟಲು
ಚಿಗಿದುದಿಳೆ ಮೂಡಲು ಮಹಾ ಗಜವೈದಿತಾಹವವ ೯

ಪವನಬಲ ಪರಿದಳಿತ ಕದಳೀ
ನಿವಹದಲಿ ನಭ ಧಾತುಗೆಟ್ಟುದು
ರವಿಗೆ ಕಾಪಥವಾಯ್ತು ಹೊಗಳುವನೇನನದುಭುತವ
ಭುವನ ಕೋಶದೊಳಾದ ವಿಪಿನೋ
ದ್ರವವೊ ಭಾರಿಯ ದಂತಿ ಮಹದಾ
ಹವದೊಳಿಳಿದುದು ಕೃಷ್ಣನೊಲಿದರಿಗಾವುದರಿದೆಂದ ೧೦

ಹಿಡಿವ ಬಿಡುವೊಬ್ಬುಳಿಗೆ ತಹ ಬಲ
ನೆಡಕೆ ಹಾಯ್ಕುವ ಸುತ್ತಲೊತ್ತುವ
ತಡೆವ ನಡಸುವ ಸೆಳೆವ ತಿರುಹುವ ಹದಿರ ಜೋಕೆಯಲಿ
ಗಡಣಿಸಿದನವನಿಭಪತಿಯನವ
ಗಡಿಸಿ ನೂಕಿದೊಡಮಮ ದಿಕ್ಕರಿ
ನಡುಗೆ ಚೌಕದ ಕಳನ ತುಳಿದುದು ಸುಪ್ರತೀಕಗಜ ೧೧

ಇದು ಗಜಾಸುರನೋ ಮಹಾ ದೇ
ವಿದುವೆ ಮಹಿಷಾಸುರನೊ ಮಾಯಾ
ರದನಿಯೋ ದಿಟವಿದನು ಗೆಲುವರೆ ಭೀಮ ಫಲುಗುಣರು
ತ್ರಿದಶ ರಿಪುಗಳ ಗಂಡನಿದು ಕಾ
ದಿದೆವು ನಾವಿಂದೆನುತ ಸುಭಟರು
ಕದಡಿ ಸರಿದುದು ಸೂರೆಗೊಂಡುದು ಬಲ ಪಲಾಯನವ ೧೨

ಮೊಗದ ಜವನಿಕೆದೆಗೆದು ನೆತ್ತಿಯ
ಬಗಿದು ಕೂರಂಕುಶದಲಾನೆಯ
ಬೆಗಡುಗೊಳಿಸಲು ಬೀದಿವರಿದುದು ಸುಭಟರೆದೆಯೊಡೆಯೆ
ಹಗೆಯ ಬಲದಲಿ ಹರಿದು ಸುಭಟರ
ಚಿಗುಳಿದುಳಿದುದು ತಲೆಗಳನು ಮುಗಿ
ಲಗಲದಲಿ ಹರಹಿದುದು ದಿಕ್ಕರಿ ಹೊಕ್ಕು ಮೋಹರವ ೧೩

ನೆಳಲು ಸುಳಿಯಲು ದಂತಿಯೆಂದ
ಪ್ಪಳಿಸೆ ವಾಸುಕಿ ನೊಂದನಂಬುಧಿ
ತುಳುಕಿದವು ಸತ್ವಾತಿಶಯವೆಂತುಂಟು ಮಹಾದೇವ
ತುಳಿದುದರಿ ಸುಭಟರನು ಸಾವಿರ
ತಲೆಯ ಸೆಳೆದುದು ಸೊಂಡಿಲಲಿ ವೆ
ಗ್ಗಳೆಯ ಮದಕರಿ ಕೇಣಿಗೊಂಡುದು ವೈರಿಮೋಹರವ ೧೪

ಸೀಳಿ ಹರಹಿತು ಕರಿಗಳನು ನೇ
ಪಾಳಗುದುರೆಯ ಥಟ್ಟುಗಳ ಹಿಂ
ಗಾಲಲಣೆದುದು ರಥವನೈದಾರೇಳನೊಂದಾಗಿ
ತೋಳೊಳಗೆ ನೆಗ್ಗೊತ್ತಿ ಮಿಗೆ ಕಾ
ಲಾಳ ತೊತ್ತಳದುಳಿದು ಕಾಲನ
ಗೋಳೆಯಕ್ಕುಪಕಾರಿಯಾದುದು ಸುಪ್ರತೀಕಗಜ ೧೫

ದ್ವಿಗುಣ ತ್ರಿಗುಣದಲಣೆದು ಜೋಡಿಸಿ
ಚಿಗಿದು ಹಾಯ್ಕುವ ಮೆಟ್ಟಿ ಸೀಳುವ
ತೆಗೆದು ಕಟ್ಟುವ ತಿರುಹಿ ನೂಕುವ ಹೆಡತಲೆಯೊಳಡಸಿ
ಉಗುರೊಳೌಕುವ ನಿಗ್ಗವದೊಳಿ
ಬ್ಬಗಿಯ ಮಾಡುವ ಕಾಲುಗೊಲೆಯಲಿ
ವಿಗಡ ಕರಿ ತುಳಿದಾಡಿತಿದಿರಿದಿರಾದ ಪಟುಭಟರ ೧೬

ಅರೆದುದೋ ಪರಬಲವ ಕಾಲನ
ಹೊರೆದುದೋ ಮಾರಣದ ಮಂತ್ರವ
ಬರೆದುದೋ ಬವರಕ್ಕೆ ಬಲುಗೈಗಳನು ಕೈ ನೆಗಹಿ
ಕರೆದುದೋ ಬಲವೆಲ್ಲ ನೀರಲಿ
ನೆರೆದುದೋ ಮಾರ್ಬಲದ ವೀರರು
ಹರೆದುದೋ ಹವಣೆಲ್ಲ ದಂತಿಯ ಸಮರಸೌರಂಭ ೧೭

ಮುರಿದು ಮಂದರಗಿರಿ ಪಯೋಧಿಯ
ತೆರೆಗಳನು ತುಳಿವಂತೆ ರಿಪು ಮೋ
ಹರವನರೆದುದು ನುಗ್ಗುನುಸಿಯಾಯ್ತಖಿಳ ತಳತಂತ್ರ
ತೆರಳಿದರು ರಾವುತರು ರಥಿಕರು
ಹೊರಳಿಯೊಡೆದುದು ಗಜದ ಗಾವಳಿ
ಜರಿದುದಳಿದುದನಾರು ಬಲ್ಲರು ಭೂಪ ಕೇಳೆಂದ ೧೮

ಮುರಿದು ಕೊಟ್ಟುದು ದಂತಿ ಗುರುವಿ
ನ್ನುರುಬಿ ರಾಯನ ಹಿಡಿಯದಿರನಿದ
ತರುಬಲಾಪರೆ ಬರಲಿ ಸಾತ್ಯಕಿ ನಕುಲ ಪವನಜರು
ಇರಿತಕಿವರಂಜಿದರೆ ಪಾರ್ಥನ
ಗರುಹಿ ಬೇಗದೊಳೆನುತ ನಾಯಕ
ರೊರಲುತಿರಲನುವಾದುದಿತ್ತಲು ದೊರೆಗಳೊಗ್ಗಿನಲಿ ೧೯

ಅಳ್ಳಿದೆಯ ಮನ್ನೆಯರನೊಗ್ಗಿನ
ಡೊಳ್ಳುಗರ ಕಟವಾಯ ಕೊಯ್ ತಲೆ
ಗಳ್ಳರಿವದಿರು ತರಿಚುಗೆಡೆವರ ಹೋಗ ಹೇಳೆನುತ
ಬಿಲ್ಲಗೊಲೆಗೇರಿಸುತ ಚೌಪಟ
ಮಲ್ಲ ಹೊಕ್ಕನು ಭೀಮ ಭಟರ
ಲ್ಲಲ್ಲಿ ಕವಿದುದು ದ್ರುಪದ ನಕುಲ ಯುಧಿಷ್ಠಿರಾದಿಗಳು ೨೦

ಕರಿ ಬಲುಹು ಕಲಿ ಭೀಮಸೇನನು
ದುರುಳನಿನ್ನೇನಹನೆನುತ ಮೋ
ಹರಿಸಿ ಕವಿದುದು ಮತ್ಸ್ಯ ಸೃಂಜಯ ಪಂಚ ಕೈಕೆಯರು
ತಿರುವಿಗಂಬನು ತೊಡಚಿ ಸಾತ್ಯಕಿ
ನರನ ಮಗ ಹೈಡಿಂಬ ಯವನೇ
ಶ್ವರರು ಧೃಷ್ಟದ್ಯುಮ್ನ ಮೊದಲಾಗೈದಿದರು ಗಜವ ೨೧

ಗಿರಿಯ ತರಿವರೆ ಶಕ್ರನಲ್ಲದೆ
ನೆರೆದ ದಿವಿಜ ಸಮೂಹ ಮಾಡುವ
ಭರವಸಿಕೆ ತಾನೇನು ಹೊದ್ದಿದರಿವರು ದಿಗ್ಗಜವ
ಸರಳ ಬಲುವಳೆಗಾಲವಹಿತ
ದ್ವಿರದ ಗಿರಿಯಲಿ ಕಾಣಲಾದುದು
ಕೆರಳಿ ಕರಿ ಕೈಕೊಂಡುದರೆಯಟ್ಟಿತು ಮಹಾರಥರ ೨೨

ಚೆಲ್ಲಿತಿದು ದೆಸೆದೆಸೆಗೆ ಚೌಪಟ
ಮಲ್ಲ ಗಿಲ್ಲರ ಪಾಡೆ ನಮ್ಮದು
ಬಲ್ಲಿತಹುದುಸುರಿಲ್ಲದೊಡಲಿನ ಚೆಲುವು ಫಲವೇನು
ಅಲ್ಲಿ ದೈವದ ನೆನಹು ಘನ ಜಯ
ವೆಲ್ಲಿಯದು ನಮಗಿನ್ನು ಸಾಕಿ
ನ್ನೆಲ್ಲವೇತಕೆ ಚಿತ್ತವಿಸು ಚೌದಂತನಾಹವವ ೨೩

ಸೆಳೆವಿಡಿದು ತುರುಗಾಹಿ ಪಶು ಸಂ
ಕುಲವ ತೆವರುವವೋಲು ವಾಯಸ
ಕುಲವನೊಂದೇ ಗೂಗೆ ಹೊಯ್ದರೆಯಟ್ಟುವಂದದಲಿ
ಬಲುಕಣಿಗೆಳಿವದಿರನು ಕರಿ ಮುಂ
ಕೊಳಿಸಿ ಕೆಡಹಿತು ಯವನ ಕೌಸಲ
ಬಲವ ಕೈಕೆಯ ಮಗಧ ಭೂಪರ ಕೊಡಹಿ ಹಾಯಿಕಿತು ೨೪

ಹಿಡಿಹಿಡಿಯಲೋಡಿದನು ದ್ರುಪದನು
ಸಿಡಿದು ಕೆಲಸಾರಿದನು ಪವನಜ
ನೊಡಲುಸುರ ಸಂಬಂಧವಳಿದುದು ಸಿಲುಕಿದನಿಬರಿಗೆ
ಒಡೆಮುರಿದು ಸಾತ್ಯಕಿಯ ರಥವನು
ತುಡುಕಿ ಹಾಯ್ಕಿತು ಭೀಮತನಯನ
ಕೊಡಹಿ ಬಿಸುಟುದು ಕೊಂದುದಗಣಿತ ಕರಿ ತುರಂಗಮವ ೨೫

ಮರಳಿ ಮತ್ತೆ ಮಹಾರಥರು ಸಂ
ವರಿಸಿಕೊಂಡುದು ಸರಳ ಮಳೆಗಳ
ಸುರಿದರಾನೆಯ ಮೇಲೆ ಜೋದರ ಕೋಲ ಮನ್ನಿಸದೆ
ಗಿರಿಯ ಮುತ್ತಿದ ಮಿಂಚುಬುಳುವಿನ
ಹೊರಳಿಯಂತಿರೆ ಹೊನ್ನ ಬರಹದ
ಸರಳು ಮೆರೆದವು ಕರೆದರದುಭುತ ಕಣೆಯ ಸರಿವಳೆಯ ೨೬

ಬಾಲರೆಸುಗೆಯ ಮಿಟ್ಟೆಯುಂಬಿಗೆ
ಸೋಲುವುದೆ ಗಿರಿ ವೈರಿ ಸುಭಟರ
ಕೋಲ ಕೊಂಬುದೆ ವೀರ ಕುಂಜರ ಮತ್ತೆ ಮೊಗ ನೆಗಹಿ
ಆಳೊಳಗೆ ಬೆರಸಿತು ಮಹಾ ರಥ
ರೋಳಿ ಮುರಿದುದು ಕುರಿಯ ಹಿಂಡಿನ
ತೋಳನೈ ನಿನ್ನಾನೆ ಸವರಿತು ಮತ್ತೆ ಮಾರ್ಬಲವ ೨೭

ಹಡಗು ಜಲಧಿಯೊಳೋಡಿ ಗಿರಿಗಳ
ಸೆಡಹಿ ನುಗ್ಗಾದಂತೆ ಸುಭಟರ
ಗಡಣ ಗಜವನು ತಾಗಿ ತಾಗಿ ವಿಘಾತಿಯಲಿ ನೊಂದು
ಒಡಲ ಮೇಲೆಳ್ಳನಿತು ಮೋಹವ
ಹಿಡಿಯದಿವರೌಕಿದರು ಹಾವಿನ
ಕೊಡನು ದೋಷಿಗೆ ಸುಲಭವೇ ಧೃತರಾಷ್ಟ್ರ ಕೇಳೆಂದ ೨೮

ಮುರಿದು ಮೋದಿತು ಸಮ್ಮುಖದೊಳಿ
ಟ್ಟೊರಸಿತೆಡದಲಿ ಹೊಯ್ದು ಸೀಳಿತು
ಹರಹಿತಪಸವ್ಯದಲಿ ಮೆದೆಗೆಡಹಿತು ಮಹಾರಥರ
ಹೊರೆದ ರಕುತದ ಧಾರೆಗಳ ತುದಿ
ಕರದೊಳೆಳಲುವ ತಲೆಗಳಂಘ್ರಿಯೊ
ಳೊರೆದ ನೆಣನಡಗಿನ ಮಹಾಗಜ ಮೊಗೆದುದರಿಬಲವ ೨೯

ಹಿಂದೆ ಹಿಡಿವರು ಮುರಿದರೆಡದಲಿ
ಸಂದಣಿಸುವರು ತಿರುಗಿದರೆ ಬಲ
ದಿಂದ ಕೈ ಮಾಡುವರು ಕವಿದರೆ ಸಿಡಿವರೆಡಬಲಕೆ
ಮುಂದೆ ಕಟ್ಟುವರಟ್ಟಿದರೆ ಮುರಿ
ವಿಂದ ಜಾರುವರಾ ಮಹಾರಥ
ವೃಂದ ಕಾದಿತು ಮದಕರಿಯ ಬೇಸರದೆ ಬಳಿಸಲಿಸಿ ೩೦

ಕರಿಯ ಕೋಲಾಹಲವನಾ ಜೋ
ದರ ಶರೌಘವ ಸೈರಿಸುತ ಮು
ಕ್ಕುರುಕಿ ಧರ್ಮಜ ನಕುಲ ಸಾತ್ಯಕಿ ಭೀಮ ನಂದನರು
ಸರಳ ಸಾರವ ಕಟ್ಟಿದರು ಮಿಗೆ
ಕೆರಳಿದನು ಭಗದತ್ತನನಿಬರ
ಹರೆಗಡಿದು ಹೊಗರಂಬ ಸುರಿದನು ಸರಿದರತಿರಥರು ೩೧

ಹತ್ತು ಶರದಲಿ ಧರ್ಮಜನನಿ
ಪ್ಪತ್ತರಿಂದಭಿಮನ್ಯುವನು ತೊಂ
ಬತ್ತು ಶರದಲಿ ನಕುಲ ಸಾತ್ಯಕಿ ದ್ರುಪದ ಕೈಕೆಯರ
ಕೆತ್ತಿದನು ಹದಿನೆಂಟು ಬಾಣದ
ಲಿತ್ತ ಭೀಮನ ನಂದನನನೈ
ವತ್ತು ಶರದಲಿ ಸಕಲ ರಥಿಕರನೆಚ್ಚು ಬೊಬ್ಬಿರಿದ ೩೨

ಬಿನುಗುಗಳ ತೆಗೆ ಭೀಮಸೇನನ
ಮೊನೆಗೆ ಬಿಡು ಬಿಡು ಗಜವನೆಂದು
ಬ್ಬಿನಲಿ ತಿರುಹಿದನಾನೆಯನು ಪವನಜನ ಸಮ್ಮುಖಕೆ
ಧನುವ ಬಿಸುಟನು ಗದೆಯ ತುಡುಕಿದ
ನನುವರದೊಳಡ್ಡೈಸಿ ದಂತಿಯ
ಕನಲಿಸಿದನೊಳಹೊಕ್ಕು ಹೊಯ್ದನು ಸಿಂಹನಾದದಲಿ ೩೩

ಭುಜದ ಸಾಹಸ ಹತ್ತು ಸಾವಿರ
ಗಜದ ಘಾಡಿಕೆ ಸಿಂಹನಾದದ
ವಿಜಯ ವಿಗ್ರಹ ವೀರ ಹಳಚಿದನಮಮ ಮದಕರಿಯ
ತ್ರಿಜಗ ತಲೆಕೆಳಗಾಗೆ ದಿವಿಜ
ವ್ರಜ ಭಯಂಗೊಳೆ ಮಿಕ್ಕು ಸುರಪನ
ಗಜದ ಹೊಯ್ ಕೈಯ್ಯಾನೆ ಹೆಣಗಿತು ಭೀಮಸೇನನಲಿ ೩೪

ಚಿಗಿದು ಹರಿಸುತ ಹಳಚಿದರೆ ಕುಲ
ದಿಗಿಭವೆದೆಯೊಡೆದವು ನಗಂಗಳ
ಬಿಗಹು ಸಡಿಲಿತು ಧರಣಿ ನೆಗ್ಗಿತು ಚರಣ ಹತಿಗಳಲಿ
ಜಿಗಿವ ರಕುತದ ಗದೆಯ ಬಿರುಪೊ
ಯ್ಲುಗಳೊಳಗೆ ಕಿಡಿ ಮಸಗಿ ಕಬ್ಬೊಗೆ
ನೆಗೆಯೆ ಹೊಯ್ದನು ಭೀಮ ಲಂಘಿಸಿ ಗಜದ ಮಸ್ತಕವ ೩೫

ಹೊಯ್ದು ಹಿಂಗದ ಮುನ್ನ ಭೀಮನ
ಕೈದುಡುಕಿದರೆ ಮುರಿದು ಹಿಂದಕೆ
ಹಾಯ್ದು ಡೊಡೆಮುರಿಯಿತ್ತು ಕುಸಿದರೆ ಕಾಲೊಳೊಡೆ
ವ್ಯೆದೆಗೆದರಿಟ್ಟಣಿಸಿ ಪೂತ್ಕೃತಿ
ಗೈದು ಸುಭಟನ ಸಿಂಹನಾದಕೆ
ಮುಯ್ದೆಗೆದು ಕರಿ ಕಾದುತಿರ್ದುದು ಭೀಮಸೇನನಲಿ ೩೬

ನೆಳಲುಗಂಡವ್ವಳಿಸುವುದು ಸುಂ
ಡಿಲನು ತೂಗಾಡುವುದು ಹೋರಿದು
ಬಳಲುವುದು ಮೊಗ ನೆಗಹಿ ಭೀಮನ ದನಿಯನಾಲಿಪುದು
ಅಳಿಯ ಮುತ್ತಿಗೆಗಳನು ಬೀಸದೆ
ನೆಲಕೆ ಕಿವಿಯನು ಜೋಲುಬಿಡುವುದು
ಬಲುಕಣಿಯ ಹಿಡಿಹಿಂಗೆ ಲಾಗಿಸುತಿರ್ದುದಾ ದಂತಿ ೩೭

ಭೀಮನಿನ್ನರೆಘಳಿಗೆಯಲಿ ನಿ
ರ್ನಾಮನೋ ತಡವಿಲ್ಲ ದಂತಿಯ
ತಾಮಸಿಕೆ ಘನ ತೆಗೆಯಿ ತಮ್ಮನನೆನುತ ಕಳವಳಿಸೆ
ಭೂಮಿಪತಿ ಕೈಕೊಂಡನೊಡನೆ ಸ
ನಾಮರೈದಿತು ನಕುಲ ಸಾತ್ಯಕಿ
ಭೀಮಸುತನಭಿಮನ್ಯು ದ್ರುಪದ ಶಿಖಂಡಿ ಕೈಕೆಯರು ೩೮

ಮತ್ತೆ ರಥವರುವತ್ತು ಸಾವಿರ
ಮುತ್ತಿಕೊಂಡುದು ಗಜವನಾ ಭಗ
ದತ್ತ ಬಳಲಿದನವಧಿಯಿಲ್ಲದೆ ಶರವ ನೆರೆ ತುಳುಕಿ
ಮೆತ್ತಿದವು ಶರವಿಭದ ಮೆಯ್ಯಲಿ
ಬೆತ್ತ ಬೆಳೆದದ್ರಿಯವೊಲಿದ್ದುದು
ಮತ್ತಗಜ ನೊಂದರಿಯದನಿಬರ ಬಾಣ ಹತಿಗಳಲಿ ೩೯

ಕರಿ ವಿನೋದದಿ ಕುಡಿದ ಜಲವನು
ಕರಣಿಯಲಿ ತೆಗೆತೆಗೆದು ರಿಪು ಮೋ
ಹರಕೆ ಚೆಲ್ಲಿತು ಕಲ್ಪಮೇಘದ ಬಸುರ ಬಗಿದಂತೆ
ಕರ ತುಷಾರದಲಿವರು ಮೋರೆಯ
ತಿರುಹೆ ನನೆದವು ಬಾಹುರಕೆ ಹ
ಕ್ಕರಿಕೆ ಹಲ್ಲಣ ಜೋಡು ಸೀಸಕ ಛತ್ರ ಚಮರಿಗಳು ೪೦

ಸಾಕು ಬಳಲಿದಿರಕಟಕಟ ನಿಮ
ಗೇಕೆ ಸಂಗರವಾನೆಯೊಡನೆ ಪಿ
ನಾಕಿ ಸಮರದೊಳಳುಕುವನು ಕರಿ ನಿಮ್ಮ ಪಾಡೇನು
ಆ ಕಿರೀಟಿಯ ಕರಸಿಕೊಳ್ಳಿ ವಿ
ವೇಕವುಳ್ಳರೆ ತೊಲಗಿಯೆನುತವೆ
ನೂಕಿದನು ಭಗದತ್ತನನಿಬರ ಮೇಲೆ ದಿಗ್ಗಜವ ೪೧

ಮಿಗೆ ತಿಮಿಂಗಿಲನೊಡನೆ ಹುಲು ಮೀ
ನುಗಳು ಮಾಡುವುದೇನು ಹೊರ ಕಾ
ಲುಗಳ ಹೋರಟೆ ಕಾಣಲಾದುದು ಪರರ ಥಟ್ಟಿನಲಿ
ತೆಗೆಯೆ ರಿಪುಬಲ ಕೊಲುತ ಬಂದುದು
ದಿಗಿವವಿದರೊಡನೈದಿ ದ್ರೋಣಾ
ದಿಗಳು ಹೊಕ್ಕುದು ಧರ್ಮಪುತ್ರನ ಹಿಡಿವ ತವಕದಲಿ ೪೨

ತಿದ್ದಿತೋ ಕಲಿ ಪಾರ್ಥನಿದ್ದರೆ
ಹೊದ್ದ ಹೇಳೋ ರಾಯದಳವಡಿ
ಗದ್ದದೋ ಬಿದ್ದುದು ಭಯಾಂಬುಧಿಯೊಳಗೆ ಭಟನಿಕರ
ಹದ್ದು ಕಾಗೆಯ ಮನೆಗೆ ಬಾಣಸ
ವಿದ್ದುದೋ ಗಜವೆನುತ ಬೊಬ್ಬಿಡು
ತಿದ್ದುದರಿ ಬಲವಿತ್ತ ಹರಿ ಕೇಳಿದನು ಕಳಕಳವ ೪೩

ಮರುಳು ಫಲುಗುಣ ಸುಪ್ರತೀಕದ
ಖುರಪುಟವ ನೋಡಿತ್ತಲಗ್ಗದ
ಪರಶುರಾಮನ ಖಾತಿಗಂಬುಧಿ ನೆಲನ ಬಿಡುವಂತೆ
ತೆರಳುತಿದೆ ನಮ್ಮವರು ದಿಕ್ಕರಿ
ಹರಹಿ ಕೊಲುತಿದೆ ಮಾತಿಗಿಲ್ಲವ
ಸರವೆನುತ ಕರಿಯತ್ತ ತಿರುಹಿದನಸುರರಿಪು ರಥವ ೪೪

ಹೆದರದಿರು ನರ ಹೋಗದಿರು ಹೋ
ಗದಿರು ಕೊಡು ಕೊಡು ಕಾಳಗವನೆಂ
ದದಟರಟ್ಟಿತು ವೀರ ಸಮಸಪ್ತಕರು ಸೂಠಿಯಲಿ
ಇದಿರಲಿನಸುತ ಶಲ್ಯರಡಗ
ಟ್ಟಿದರು ಖತಿಯಲಿ ಪಾರ್ಥನನಿಬರ
ಸದೆದು ವಹಿಲದಲೈದಿದನು ದಿಕ್ಕರಿಯ ಸಮ್ಮುಖಕೆ ೪೫

ಬಲು ಬಿಸಿಲೊಳುರೆ ನೊಂದ ನೈದಿಲೆ
ಗಳಿಗೆ ಚಂದ್ರಿಕೆ ದೈತ್ಯರುರುಬೆಗೆ
ಸಿಲುಕಿದಮರರಿಗಸುರಹರನ ಕಟಾಕ್ಷವಿಕ್ಷೇಪ
ಬಲಿದ ತಾಪತ್ರಯದ ಭವಗೋ
ಟಲೆಯ ಜೀವಿಗೆ ಸುಪ್ರಬೋಧದ
ಸುಳುವಿನಂತಿರೆ ಪಾರ್ಥ ಮೈದೋರಿದನು ನಿಜಬಲಕೆ ೪೬

ಕೆದರಿತೀ ಬಲ ಬೆರಳ ತುಟಿಗಳೊ
ಳೊದರಿತಾ ಬಲ ತಾಪಶಿಖಿಯಲಿ
ಕುದಿದುದೀ ಬಲ ಭೀತಿಕಂಚುಕ ಕಳೆದುದಾ ಬಲಕೆ
ಕದಡಿತೀ ಬಲ ರೋಮಪುಳಕವ
ಹೊದೆದುದಾ ಬಲ ಹಿಂಡೊಡೆದು ನೆರೆ
ಕದುಬಿತೀ ಬಲ ನೆರೆದುದಾ ಬಲ ನರನ ರಥ ಸುಳಿಯೆ ೪೭

ಗಿರಿಯ ವಿಸಟಂಬರಿಯನಮರೇ
ಶ್ವರನು ತಡೆವವೊಲಳ್ಳಿರಿವ ದಿ
ಕ್ಕರಿಯನಡಗಟ್ಟಿದನು ಕಾಯದೊಳೊಟ್ಟಿದನು ಶರವ
ಕೆರಳಿದನು ಭಗದತ್ತನಿವನೇ
ನರನು ಫಡ ಫಡ ನಿಲ್ಲು ನಿಲ್ಲೆನು
ತುರು ಶರೌಘವ ಕರೆದು ಮುಸುಕಿದನರ್ಜುನನ ರಥವ ೪೮

ಪೂತುರೇ ಭಗದತ್ತ ಬಿಲು ವಿ
ದ್ಯಾತಿಶಯ ಕಿರಿದುಂಟಲಾ ಶರ
ಪಾತವಿನಿತಿಲ್ಲದಡೆ ಹೊಳ್ಳಿಸಬಹುದೆ ನೃಪ ಧನವ
ನೂತನ ದ್ವಿಪದಿಂದ ವೈರಿ
ವ್ರಾತವನು ಸೋಲಿಸಿದ ಗರ್ವದ
ರೀತಿಗಿದು ಠಾವಲ್ಲೆನುತ ತೆಗೆದೆಚ್ಚನಾ ಪಾರ್ಥ ೪೯

ನರನ ಶರಜಾಲವನು ಖಂಡಿಸಿ
ಸುರಿದನಂಬನು ಕೃಷ್ಣರಾಯನ
ಸಿರಿಯೊಡಲ ಸೋಂಕಿದವು ನೂಕಿದವಂಬು ಗರಿ ಸಹಿತ
ನರನ ಕುದುರೆಯ ಮೇಲೆ ಸಿಂಧದ
ಹರಿಯ ತನುವಿನ ಮೇಲೆ ತಳಿತವು
ಶರನಿಕರ ಬಿಡದೆಚ್ಚನಾ ಭಗದತ್ತನರ್ಜುನನ ೫೦

ಸೆಳೆದು ಬಾಣತ್ರಯದಲೆಚ್ಚನು
ಫಲುಗುಣನ ಮಕುಟವನು ಮುರಿದುದು
ಕೆಲಕೆ ಸಡಿಲುವ ಮಣಿಗಳಲಿ ವರಮೌಳಿಯೋಸರಿಸೆ
ಬಲಿದ ಸಸಿನವ ಮಾಡಿ ಖಾತಿಯ
ತಳೆದು ಕೂರಂಬಿನಲಿ ಹೂಳಿದ
ನಳವಿಯಲಿ ರಿಪುಗಜವನಾ ಭಗದತ್ತನವಯವವ ೫೧

ಇಳುಹಿದನು ಬಲುಗುಳವ ಖಂಡಿಸಿ
ಕಳಚಿದನು ಮೊಗರಂಬವನು ಹೊ
ಮ್ಮಿಳಿಯ ಕುಣಿಕೆಯ ಮುರಿದು ತರಿದನು ಸುತ್ತ ರೆಂಚೆಗಳ
ಹಳವಿಗೆಯನಾ ಛತ್ರ ಚಮರಾ
ವಳಿಯ ಸೀಳಿದು ಬಿಸುಟನಾ ಗಜ
ತಿಲಕ ಮುಂಡಾಸನದಲಿರ್ದುದು ಭೂಪ ಕೇಳೆಂದ ೫೨

ಮತ್ತೆ ಖಾತಿಯೊಳಂಕುಶದಿನೊಡೆ
ಯೊತ್ತಿ ಬಿಟ್ಟನು ಗಜವನರ್ಜುನ
ನತ್ತಲಿಭ ತೂಳಿದಡೆ ತಿರುಹಿದನಸುರರಿಪು ರಥವ
ಇತ್ತ ಬಲದಲಿ ಬಲಕೆ ಮೊಗವಿಡ
ಲತ್ತಲೆಡದಲಿ ಮರಳಲಲ್ಲಿಂ
ದತ್ತ ತಿರುಗಿಸಿ ಬಳಲಿಸಿದನಸುರಾರಿ ದಿಗ್ಗಜವ ೫೩

ಸಾರಥಿಯ ಕೊಂದಲ್ಲದರ್ಜುನ
ತೀರುವವನಲ್ಲೆನುತ ದಳ್ಳುರಿ
ಧಾರೆಯಂಬೈದರಲಿ ದೇವನನೆಸಲು ಮಧ್ಯದಲಿ
ಹಾರಿಸಿದನಾ ಪಾರ್ಥನಿವನೆಡೆ
ಗೋರಿದನಲಾಯೆನುತ ಕೆಡೆಯೆಸು
ತಾರಿ ಸುರಿದನು ನೂರು ಬಾಣವನರ್ಜುನನ ಮೇಲೆ ೫೪

ಅನಿತು ಶರವನು ಕಡಿದು ಭಗದ
ತ್ತನ ಧನುವನಿಕ್ಕಡಿಗಡಿಯೆ ಕಂ
ಗನೆ ಕನಲಿ ಗವಸಣಿಗೆಯಿಂದುಗಿದನು ನಿಜಾಯುಧವ
ದಿನಪ ಕೋಟಿಯ ರಶ್ಮಿಯನು ತುದಿ
ಮೊನೆಯೊಳುಗುಳುವ ಬಾಯಿ ಧಾರೆಯ
ತನಿಯುರಿಯ ತೆಕ್ಕೆಯಲಿ ಥಳಥಳಿಸುವ ಮಹಾಂಕುಶವ ೫೫

ತೈಲ ಲೇಪದ ನಯದ ಹೊಗರಿನ
ಜಾಳಿಗೆಯ ಗಹಗಹಿಕೆಗಳ ಹೂ
ಮಾಲೆಗಳ ಸಿಂಪಿಸಿದ ಗಂಧದ ಬಂಧದಕ್ಷತೆಯ
ಕೀಲಣೆಯ ಮಣಿವೆಳಗುಗಳ ಹರಿ
ದಾಳಿಯಲಿ ಕಾಳೋರಗನ ಕುಡಿ
ನಾಲಗೆಯವೊಲೆಸೆದುದಂಕುಶ ಭಟನ ಮುಷ್ಟಿಯಲಿ ೫೬

ಕುಡಿ ಕಿರೀಟಿಯ ರಕುತವನು ಹಗೆ
ಕೆಡಲಿ ಕೌರವ ರಾಯನಾಳಲಿ
ಪೊಡವಿಯನು ಪರಿತೋಷವಾಗಲಿ ನೃಪನ ಮಿತ್ರರಿಗೆ
ತಡೆದು ಹಲಕಾಲದಲುಪಾಸಂ
ಬಡಿಸಿದೆನ್ನದು ದೋಷ ಖಾತಿಯ
ಹಿಡಿಯದಿರು ನೀನೆನುತ ತಿರುಹಿಟ್ಟನು ಮಹಾಂಕುಶವ ೫೭

ತೀರಿತಿನ್ನೇನಕಟ ಪಾಂಡವ
ವೀರರುಬ್ಬಟೆ ಹಾರಿತೇ ತ್ರಿಪು
ರಾರಿಯುರಿಗಣ್ಣಿಂಗೆ ಸೋಲದ ಕೈದುಗೊಂಡನಲ
ಧಾರುಣಿಯನಿನ್ನುಣಲಿ ಧರ್ಮಜ ಕು
ಮಾರನಕಟಿನ್ನಾರು ಕಾವವ
ರಾರೆನುತ ತಲ್ಲಣಿಸುತಿರ್ದುದು ಪಾಂಡುಸುತ ಸೇನೆ ೫೮

ಹಾ ಯುಧಿಷ್ಠಿರ ರಾಯ ಶಿವ ಶಿವ
ವಾಯುಸುತ ಹಾ ಪಾರ್ಥ ಹಾ ಮಾ
ದ್ರೇಯರಿರ ಹಾಯೆನುತ ಹರೆದುದು ಸೇನೆ ದೆಸೆದೆಸೆಗೆ
ಬಾಯ ಬಿಟ್ಟುದು ದಿವಿಜಬಲ ನಿ
ರ್ದಾಯದಲಿ ನೆಲನಾಯಿತಲ ಕುರು
ರಾಯಗೆನುತಿರ್ದುದು ಜಗತ್ರಯವೊಂದು ನಿಮಿಷದಲಿ ೫೯

ಇದರ ಪಾಡೇನೇಸಪಾಯವ
ನೊದೆದು ಕಳೆಯರು ಕೃಷ್ಣಭಕ್ತರು
ಸದರವೇ ಉರಿಗೆಂಡವೊರಲೆಯ ಬಾಯ್ಗೆ ಭಾವಿಸಲು
ಹೊದರುಗಿಡಿಗಳ ಹೊಗೆಯ ಹೇರಾ
ಳದಲಿ ಬಹ ದಿವ್ಯಾಯುಧಕೆ ಚಾ
ಚಿದನು ವಕ್ಷಸ್ಥಳವನಸುರಾರಾತಿಯಡಹಾಯ್ದು ೬೦

ಮೆರೆದುದುರದಲಿ ಕೌಸ್ತುಭದ ಮಣಿ
ಮರಿಯನಿಳುಹಿದ ವೋಲು ಬೆಳಗಿನ
ತುರುಗಲಲಿ ತೂಗಾಡುತಿದ್ದುದು ಕೈದು ತೊಡವಾಗಿ
ಮುರಿದುದಗ್ಗದ ಭೀತಿ ಹರುಷದ
ಸೆರೆಗೆ ಬಿಡುಗಡೆಯಾಯ್ತು ಬಲು ಬೊ
ಬ್ಬಿರಿವುತಿರ್ದುದು ವೈರಿಕಟಕದೊಳರಸ ಕೇಳೆಂದ ೬೧

ಕೌತುಕವನಿದ ಕಂಡು ಫಲುಗುಣ
ಕಾತರಿಸಿ ನುಡಿದನು ಮುರಾಂತಕ
ಸೂತತನಕಲಸಿದನೆ ಕಾದಲಿ ಕೌರವನ ಕೂಡೆ
ಸೂತತನವೇ ಸಾಕು ತನಗೆನು
ತಾ ತತುಕ್ಷಣ ಧನುವ ಬಿಸುಟು ವಿ
ಧೂತ ರಿಪುಬಲ ಪಾರ್ಥನಿದ್ದನು ಹೊತ್ತ ದುಗುಡದಲಿ ೬೨

ತಿರುಗಿ ಕಂಡನು ಕೃಷ್ಣನೀತನ
ಪರಿಯನರಿದನು ಮನದಲಿವನು
ತ್ತರವ ಕೇಳುವೆವೆಂದು ಪಾರ್ಥನ ನುಡಿಸಿದನು ನಗುತ
ಉರವಣಿಸುತಿದೆ ಮತ್ತೆ ಕರಿ ನಿಜ
ಕರದೊಳಾಯುಧವಿಲ್ಲ ಘನ ಸಂ
ಗರಕೆ ಬೇಸರು ತೋರಿತೇ ತನ್ನಾಣೆ ಹೇಳೆಂದ ೬೩

ಕಾದುಪಾತನು ನೀನು ವೈರಿಯ
ಕೈದುವನು ನೀ ಗೆಲಿದೆಯಿನ್ನುರೆ
ಕಾದುವವರಾವಲ್ಲ ಸಾರಥಿತನವೆ ಸಾಕೆಮಗೆ
ಕೈದುವಿದೆಕೊ ಕೃಷ್ಣ ನೀನೇ
ಕಾದು ಪಾಘೆಯ ತಾಯೆನಲು ಮರು
ಳಾದನೈ ನರನೆನುತ ಮುರಾರಿಯಿಂತೆಂದ ೬೪

ಆಡಬಾರದು ತೋರಿ ನುಡಿದರೆ
ಖೋಡಿ ನಿನಗಹುದೆಲೆ ಮರುಳೆ ನೀ
ನೋಡಲೆವೆ ಸೀವವು ಕಣಾ ನಿನ್ನಳವಿನಾಯುಧವೆ
ಹೂಡಲಾಪುದು ಜಗವನಂತಕ
ಗೂಡಲಾಪುದು ಮುನಿದರಿದ ಕೈ
ಮಾಡುವರೆ ನಿಲಬಾರದಜ ರುದ್ರಾಮರೇಂದ್ರರಿಗೆ ೬೫

ವಿಲಸದುಪನಿಷದುರು ರಹಸ್ಯವ
ತಿಳುಹಿದೆನು ನಿನಗೊಮ್ಮೆ ಮತ್ತೆಯು
ತಿಳಿದುದಿಲ್ಲಾ ಕ್ಷತ್ರತಾಮಸ ಬಿಡದು ಬುದ್ಧಿಯುಲಿ
ಸುಲಭವಂತರ್ನಿಷ್ಠರಿಗೆ ನಿ
ಷ್ಕಳ ನಿರೂಪನನಂತ ನಿಜ ನಿ
ರ್ಮಳವೆನಿಪ ಪರಮಾತ್ಮ ಚಿನುಮಯ ರೂಪ ತಾನೆಂದ ೬೬

ಸಂಗಿಯಲ್ಲದ ವಿಮಳ ಪರಮಾ
ತ್ಮಂಗೆ ಲೀಲೆಯೊಳಾಯ್ತು ಮಾಯಾ
ಸಂಗವದರಿಂದಾಯ್ತು ನಾಲುಕು ಮೂರ್ತಿಗಳು ತನಗೆ
ಅಂಗಿಯಂಗ ವಿಭಾಗವಿಲ್ಲದ
ಭಂಗ ಸನ್ಮಾತ್ರಂಗೆ ಭಾವಿಸ
ಲಂಗ ಕಲ್ಪನೆ ಮಿಥ್ಯವಲ್ಲಾ ಪಾರ್ಥ ಹೇಳೆಂದ ೬೭

ಇಂದು ಕಮಳಭವ ಪ್ರಜೇಶ್ವರ
ರೊಂದು ಮೂರುತಿ ವಿಷ್ಣು ಮನುಗಳು
ಸಂದ ಪಾರ್ಥಿವ ಲೋಕಪಾಲಕರೊಂದು ಮೂರ್ತಿಯದು
ಇಂದು ಶೇಖರನಗ್ನಿ ಯಮನರ
ವಿಂದಸಖ ಕಾಲಾಗ್ನಿ ಮೂರ್ತಿಯ
ರೊಂದು ಮೂರುತಿ ವಿಶ್ವದೊಳು ನಿಷ್ಯೂತ ಚೈತನ್ಯ ೬೮

ಇದುವೆ ಮತ ಕೆಲಬರಿಗೆ ಕೆಲಬರಿ
ಗಿದು ಮತವು ವಿವಿಧಾವತಾರದ
ಲುದಿಸುತೊಂದಿಹುದೊಂದು ಮೂರ್ತಿ ತಪೋ ವಿನೋದದಲಿ
ಉದಧಿಯೊಳು ವರ ಯೋಗ ನಿದ್ರಾ
ಸ್ಪದದಲೊಂದಿಹುದೊಂದಖಿಳ ವಿ
ಶ್ವದ ಸುಕೃತ ದುಷ್ಕೃತವನೀಕ್ಷಿಸುತಿಹುದು ಕೇಳೆಂದ ೬೯

ಕೆಲರು ಧರ್ಮಾರ್ಥಾದಿ ನಾಲುಕು
ಲಲಿತ ಮೂರ್ತಿಗಳೆಂಬರಿದರೊಳು
ಕೆಲರು ಜಾಗರಣಾದ್ಯವಸ್ಥೆಗಳೆಂಬ ಮೂರ್ತಿಗಳು
ತಿಳಿಯಲೋತಪ್ರೋತದಲಿ ನಿ
ಷ್ಕಳವೆ ಸಕಳವೆಯಾಗಿ ವಿಶ್ವದೊ
ಳೊಳಗು ಹೊರಗಾನಲ್ಲದಿಲ್ಲೆಲೆ ಪಾರ್ಥ ಕೇಳೆಂದ ೭೦

ಉದಧಿಶಯನನ ಮೂರ್ತಿ ಕಲ್ಪಾಂ
ತದಲಿ ಕರಗಿದ ಧರೆಯನುದ್ಧರಿ
ಸಿದೆನು ಯಜ್ಞವರಾಹ ರೂಪಿನಲಂದು ಕರುಣದಲಿ
ಪದವ ಭಜಿಸಿಯೆ ಭೂಮಿ ತಾ ಬೇ
ಡಿದಳು ಪುತ್ರನನಾಕೆಯುಲಿ ಜನಿ
ಸಿದನು ನರಕಾಸುರನವಧ್ಯನು ಸಕಲ ದಿವಿಜರಿಗೆ ೭೧

ಇದು ವರಾಹನ ದಾಡೆಯಿದನಾ
ತ್ರಿದಶವೈರಿಗೆ ಕೊಟ್ಟೆನವನಿಂ
ದಿದುವೆ ಭಗದತ್ತಂಗೆ ಬಂದು ವೈಷ್ಣವಾಸ್ತ್ರವಿದು
ಇದು ಹರಬ್ರಹ್ಮಾದಿಗಳ ಗೆಲು
ವುದು ಕಣಾ ನಿಮಿಷದಲಿ ತನಗ
ಲ್ಲದೆ ಮಹಾಂಕುಶವುಳಿದ ಭಟರಿಗೆ ಮಣಿವುದಲ್ಲೆಂದ ೭೨

ತೀರಿತಾತನ ಶಕ್ತಿ ಚಾಪದ
ನಾರಿ ಬೆಸಲಾಗಲಿ ಮಹಾಸ್ತ್ರವ
ನಾರುಭಟೆಯಲಿ ಗಜವ ಮುರಿ ಕೆಡೆಯೆಸು ಮಹೀಸುತನ
ಹೋರದಿರು ಹೊಗು ಬವರಕೆನಲಸು
ರಾರಿಯಂಘ್ರಿಯೊಳೆರಗಿ ಕರುಣಾ
ವಾರಿಧಿಯೊಳಭಯವನು ಪಡೆದನು ತುಡುಕಿದನು ಧನುವ ೭೩

ಎಲವೆಲವೊ ಭಗದತ್ತ ಕಲಿತನ
ದಳವ ತೋರಿನ್ನೆನಗೆನುತ ಹೊಳೆ
ಹೊಳೆವ ಕೂರಂಬಿನಲಿ ಕೋದನು ಗಜದ ಮಸ್ತಕವ
ನಿಲುಕಿ ನೆತ್ತಿಯನೊಡೆದು ನಿಡು ಪ
ಚ್ಚಳಕೆ ಹಾಯ್ದವು ಬಾಣ ದಿಕ್ಕರಿ
ನೆಲಕೆ ದಾಡೆಯನೂರಿ ಕೆಡೆದುದು ಸುಪ್ರತೀಕಗಜ ೭೪

ಸುತ್ತಿದುರಗನ ಮಂದರಾಚಲ
ಕಿತ್ತು ಬೀಳ್ವಂದದಲಿ ಬರಿಕೈ
ಸುತ್ತಿ ಮಗ್ಗುಲನೂರಿ ಕೆಡೆದುದು ಸುಪ್ರತೀಕಗಜ
ಇತ್ತಲರ್ಜುನ ದೇವನುಗಿದನು
ಬತ್ತಳಿಕೆಯಲಿ ದಿವ್ಯ ಶರವನು
ತೆತ್ತಿಸಿದನವನುರವನಿಬ್ಬಗಿಯಾದುದರಿ ದೇಹ ೭೫

ಗಿರಿಯ ಶಿರದಲಿ ಹೂತ ಕಕ್ಕೆಯ
ಮರ ಮುರಿದು ಬೀಳ್ವಂತೆ ವಿಮಳಾ
ಭರಣ ಕಾಂತಿಯ ಕಡಲ ಕೋಮಲಕಾಯ ಭಗದತ್ತ
ಉರುಳಿದನು ಗಜದಿಂದ ಕುರುಬಲ
ಸರಿಯೆ ಸುರಕುಲ ಕುಸುಮ ವೃಷ್ಟಿಯ
ಸುರಿಯೆ ರಿಪುಸೇನೆಯಲಿ ಹರುಷದ ಹೊನಲು ಬಿರುವರಿಯೆ ೭೬

ಹರಿದುದಗ್ಗದ ಸುಪ್ರತೀಕ
ದ್ವಿರದ ಭಗದತ್ತಾಂಕನವನಿಯೊ
ಳುರುಳಿದನು ದಳ ಮುರಿದುದಿನ್ನೇನೆನುತ ಬಲ ಬೆದರೆ
ನರನ ತಡೆದರು ಸುಬಲ ಸುತರಿ
ಬ್ಬರು ನೃಪಾಲ ಕುಮಾರರೈನೂ
ರುರುಬಿದರು ಗಾಂಧಾರ ರಾಜರು ಶಕುನಿಯೊಡಗೂಡಿ ೭೭

ಕೊಂದನಿಬ್ಬರ ಸೌಬಲರ ನೃಪ
ನಂದನರ ಗಾಂಧಾರರೊಂದೆರ
ಡೆಂದು ಸಲುಗೆಗೆ ಸಲಿಸಿ ಬಂದೈನೂರ ಬರಿಕೈದು
ಬಂದ ದ್ರೋಣನ ಹಳಚಿ ಭಂಗಕೆ
ತಂದನಹಿತ ವ್ರಜವನಿತ್ತಲು
ಸಂದಣಿಸಿದರು ಕೌರವರು ಪವಮಾನಸುತನೊಡನೆ ೭೮

ಗುರುತನುಜ ರವಿಸೂನು ಮಾದ್ರೇ
ಶ್ವರ ಜಯದ್ರಥ ಕೌರವಾದಿಗ
ಳರಿ ಗದಾಘಾತವಲಿ ಕೈ ಮೈ ಬದಣಿದು ಮನದಣಿದು
ತೆರಳಿದರು ಬಳಿಕಪರ ಜಲಧಿಯೊ
ಳುರಿವ ವಡಬನ ದೀಪ್ತಶಿಖರದೊ
ಳಿರಗುವಂತೆ ಪತಂಗ ಮಂಡಲವಿಳಿದುದಂಬರವ ೭೯

ತಿರುಗಿದರು ಕೌರವರು ದ್ರೋಣನ
ಬೆರಳ ಸನ್ನೆಗೆ ಸನ್ನೆಗಾಳೆಗ
ಳುರವಣಿಸಿತೆನೆ ತಂಬಟದ ನಿಸ್ಸಾಳ ರಭಸದಲಿ
ಮುರಿದರಿವರಳ್ಳಿರಿವ ಬೊಬ್ಬೆಯ
ಧರಧುರದ ಕಹಳೆಗಳ ಭೇರಿಯ
ಭರಿತ ರವದಲಿ ವೀರನಾರಾಯಣನ ಕರುಣದಲಿ ೮೦

ನಾಲ್ಕನೆಯ ಸಂಧಿ

ಸೂ. ರಾಯ ಕಟಕಾಚಾರ್ಯನಾ ಚಾ
ಪಾಯುಧಾಗ್ರಣಿ ಮೋಹಿದನು ಪ
ದ್ಮಾಯತ ವ್ಯೂಹವನು ಸೈನ್ಯದ ಜಾಣನಾ ದ್ರೋಣ

ನೀನು ನೆರಹಿದ ಸುಕೃತ ಫಲವದ
ನೇನ ಹೇಳುವೆನಿತ್ತಲುಗ್ಗಡ
ದಾನೆ ಬಿದ್ದುದು ಕಾದಿ ನಸು ಸೊಪ್ಪಾದುದರಿಸೇನೆ
ಧ್ಯಾನವಿತ್ತಲು ರಾಗವತ್ತಲು
ಮೋನವಿತ್ತಲು ರಭಸವಿತ್ತಲು
ಹಾನಿಯಿತ್ತಲು ವೃದ್ಧಿಯತ್ತಲು ಭೂಪ ಕೇಳೆಂದ ೧

ಎತ್ತಲೊಲೆವುದು ಧರ್ಮಬಲ ತಾ
ನತ್ತಲೊಲೆವುದು ದೈವ ದೈವವ
ದೆತ್ತಲೊಲೆದಿಹುದತ್ತ ವಿಜಯಶ್ರೀಯ ಕುಡಿನೋಟ
ಹೆತ್ತ ನಿನ್ನೊಡಲಿಂಗೆ ತಂಪಿನ
ತೆತ್ತಿಗನೊ ಮೇಣ್ ಬಹಳ ತಾಪದ
ಮುತ್ತಯನೊ ಕುರುರಾಯನೆಲೆ ಧೃತರಾಷ್ಟ್ರ ಕೇಳೆಂದ ೨

ಸಾಕು ಸಂಜಯ ನುಡಿಯ ಖಡ್ಗದ
ಲೇಕೆ ಗಂಟಲ ಕೊಯ್ವೆ ತಾನವಿ
ವೇಕದಲುಪಾರ್ಜಿಸಿದ ದುಷ್ಕೃತ ಫಲವೆ ತನಗಾಯ್ತು
ಸಾಕದಂತಿರಲಿನ್ನದೇಹರಿ
ಶೋಕಿಸುವೆನಿಲ್ಲಿಂದ ಮೇಲು
ದ್ರೇಕಿ ಕೌರವನೇನ ನೆಗಳಿದ ಹದನ ಹೇಳೆಂದ ೩

ಚಿತ್ತವಿಸು ಧೃತರಾಷ್ಟ್ರ ಕೌರವ
ನಿತ್ತನಿರುಳೋಲಗವ ಮುಂಜಿನ
ಮುತ್ತಿಗೆಯ ನಭದಂತೆ ಹೊಗೆದುದು ರಾಯನಾಸ್ಥಾನ
ನೆತ್ತಿ ಮುಸುಕಿನ ಕೈಯ ಗಲ್ಲದ
ಕುತ್ತದಲೆ ನೆಟ್ಟಾಲಿಗಳ ಚಲ
ಚಿತ್ತರಿದ್ದುದು ಸಕಲ ನಾಯಕವಾಡಿ ದುಗುಡದಲಿ ೪

ದುಗುಡವೇಕೈ ನಿಮಗೆ ಕರ್ಣಾ
ದಿಗಳು ನೀವಕ್ಕುಡರೆ ಬಲುಗಾ
ಳಗದೊಳಗೆ ಕೈಮಾಡಿ ನೊಂದಿರಿ ಕೊಂದಿರರಿಭಟರ
ಹಗೆಯ ಕಟ್ಟಲು ಕೊಟ್ಟ ಭಾಷೆಯ
ಬಿಗುಹು ಬೀತುದು ಗುರುಗಳಲಿ ನಂ
ಬುಗೆ ನಿರರ್ಥಕವಾಯ್ತೆನುತ ಕುರುರಾಯ ಬಿಸುಸುಯ್ದ ೫

ದ್ರೋಣ ಮನಗೊಂಡಿರಿವಡಂಬುಜ
ಪಾಣಿಯಿದಿರೇ ನಮ್ಮ ಭಾಗ್ಯದ
ಬಾಣಸಿಗ ವಿಧಿ ವಿಷವ ಬೆರಸಿದಡಾರು ಕಾವವರು
ಹೂಣಿ ಹೊಕ್ಕನು ಹಿಡಿದು ವೈರಿ
ಕ್ಷೋಣಿಪನ ತರುಬಿದನು ನಾವ
ಕ್ಷೀಣದುರಿತರು ಹಲುಬಿ ಮಾಡುವುದಾವುದುಂಟೆಂದ ೬

ಬಲದೊಳಗೆ ಹೆಸರುಳ್ಳವರು ಮು
ಮ್ಮಳಿತವಾಯಿತ್ತಾನೆ ಕುದುರೆಗ
ಳಳಿದುದಕೆ ಕಡೆಯಿಲ್ಲ ಪವನಜ ಪಾರ್ಥರುಬ್ಬಟೆಯ
ನಿಲಿಸುವಾಪತ್ತಿಗರು ನಮಗಿ
ಲ್ಲಳಲಿ ಮಾಡುವುದೇನೆನುತ ನೃಪ
ತಿಲಕ ಬೇಸರ ನುಡಿಯೆ ಬಳಿಕಿಂತೆಂದನಾ ದ್ರೋಣ ೭

ಪರಮ ಗರುಡೋದ್ಗಾರ ಮಣಿಯನು
ಗರಳ ಸುಡುವುದೆ ಕೃಷ್ಣರಾಯನ
ಕರುಣ ಕವಚವನೊಡೆಯಲಾಪವೆ ಎಮ್ಮ ಕೈದುಗಳು
ಅರಸ ಮರುಳೈ ಧರ್ಮಪುತ್ರನ
ಬೆರಸಿ ತುಡುಕಲು ತಡೆದನರಿಯಾ
ಮುರಹರನ ಮೈದುನನು ಬಳಿಕೆಮ್ಮಳವೆ ಹೇಳೆಂದ ೮

ನಾಳೆ ಫಲುಗುಣ ತಪ್ಪಿದರೆ ಭೂ
ಪಾಲಕನ ಕಟ್ಟುವೆನು ರಣದಲಿ
ಶೂಲಿಯಡ್ಡೈಸಿದರೆ ಹಿಡಿವೆನು ಚಿಂತೆ ಬೇಡಿದಕೆ
ಕೇಳು ಪದ್ಮವ್ಯೂಹದಲಿ ಹೊ
ಕ್ಕಾಳು ಮರಳಿದಡಸ್ತ್ರವಿದ್ಯಾ
ಭಾಳಲೋಚನನೆಂಬ ಬಿರುದನು ಬಿಟ್ಟೆ ನಾನೆಂದ ೯

ಒಳ್ಳಿತಿದು ಕಡುಭಾಷೆ ನಾಳಿನ
ಗೆಲ್ಲವೇ ಗೆಲವರ್ಜುನನು ಹೊ
ಕ್ಕಲ್ಲಿ ಹೊಗುವೆವು ತರುಬಿ ಕಾದುವೆವೆಮ್ಮ ಕಳನೊಳಗೆ
ಅಲ್ಲಿ ನೀನೊಲಿದಂತೆ ಮಾಡಿ
ನ್ನೆಲ್ಲವೇತಕೆಯೆನುತ ಸಾಹಸ
ಮಲ್ಲರೆದ್ದರು ವೀರ ಸಮಸಪ್ತಕರು ಗರ್ಜಿಸುತ ೧೦

ಪೂತು ಪಾಯಿಕು ತತ್ತ ಹೊತ್ತಿನೊ
ಳಾತುಕೊಂಬವರಾರು ಪಾರ್ಥಿವ
ಜಾತಿಯಲಿ ರಣದಿಟ್ಟರುಂಟೇ ನಿಮ್ಮ ಹೋಲಿಸಲು
ಸೋತುದರಿಬಲ ಹೋಗೆನುತ ಮು
ಯ್ಯಾಂತು ಮನ್ನಿಸಿ ಹೊನ್ನ ಬಟ್ಟಲೊ
ಳಾತಗಳಿಗೊಲಿದಿತ್ತನೈ ಕರ್ಪುರದ ವೀಳೆಯವ ೧೧

ಹರೆದುದೋಲಗವಿತ್ತ ಭುವನದೊ
ಳಿರುಳಡವಿಗಡಿತಕ್ಕೆ ಹರಿದವು
ಕಿರಣ ತೆತ್ತಿದವಭ್ರದಲಿ ತಾರಕೆಯ ತೇರುಗಳು
ಹರಿವ ಮಂಜಿನ ನದಿಯು ಹೂಳ್ದವು
ಸರಸವಾಯಿತು ಗಗನತಳ ತಾ
ವರೆಯ ಸಖ ನಿಜರಥವ ನೂಕಿದನುದಯ ಪರ್ವತಕೆ ೧೨

ಕೆದರಿದವು ನಿಸ್ಸಾಳ ಬರ ಸಿಡಿ
ಲದುಭುತ ಧ್ವನಿಯಲಿ ನಿರಂತರ
ವೊದರಿ ಬಯ್ದವು ಕಹಳೆ ಬಿರುದಾವಳಿಯಲತಿರಥರ
ಕದುಬಿದವು ತಂಬಟದ ದನಿ ದಿಗು
ಸದನವನು ಬಲು ಬೊಬ್ಬೆಯಲಿ ನೆಲ
ನದಿರೆ ನಡೆದುದು ಸೇನೆ ಕಲಶೋದ್ಭವನ ನೇಮದಲಿ ೧೩

ಉಲಿದು ಸಮಸಪ್ತಕರು ತಮ್ಮಯ
ಕಳನ ಗೆಲಿದರು ಚಾತುರಂಗದ
ದಳದ ತೆರಳಿಕೆ ತೆಕ್ಕವಿಂಗೆ ಕುರುಸೇನೆ ನಡೆತಂದು
ಕಳನ ವೆಂಠಣಿಸಿದವು ರಾಯನ
ಕೆಲಬಲದ ಸುಯಿಧಾನದಲಿ ರಿಪು
ವಳಯ ಧೂಳೀಪಟನು ಹೊಕ್ಕನು ರಣವನಾ ದ್ರೋಣ ೧೪

ನೆರೆದ ನಿಜ ಸೇನಾಧಿಪರ ಸಂ
ವರಣೆಗಳ ನೋಡಿದನು ನೀಡಿದ
ನರಿಬಿರುದ ಮಂಡಳಿಕರಿಗೆ ಕಾಳೆಗದ ವೀಳೆಯವ
ಹರಿಗೆ ಹಲಗೆ ಕೃಪಾಣ ತೋಮರ
ಪರಶು ಕಕ್ಕಡೆ ಕೊಂತ ಮುದ್ಗರ
ಸುರಗಿಯತಿಬಳ ಪಾಯ್ದಳವ ನಿರಿಸಿದನು ವಳಯದಲಿ ೧೫

ಎಸೆಳೆಸಲು ವಿಂಗೆ ಸರಿಸದಲಿ ಜೋ
ಡಿಸಿದನವನೀಪಾಲರನು ತ
ದ್ವಿಸಜ ಕರ್ಣಿಕೆಯೊಡ್ಡಿನಲಿ ಬಲಿದನು ಸುಯೋಧನನ
ಪಸರಿಸಿತು ಕೌರವ ಕುಮಾರ
ಪ್ರಸರ ಕೇಸರವಾಯ್ತು ಮೃತ್ಯುವಿ
ನೊಸಗೆಗೆತ್ತಿದ ಗುಡಿಗಳೆನೆ ತಳಿತವು ಪತಾಕೆಗಳು ೧೬

ನಿಲಿಸಿದನು ರಾವುತರನಾ ಹೊರ
ವಳಯದಲಿ ರಾವುತರು ಮುರಿದರೆ
ನಿಲುವುದೊಗ್ಗಿನ ದಂತಿಘಟೆ ಗಜಸೇನೆಗಡಹಾಗಿ
ತೊಳಗಿದವು ತೇರುಗಳು ತೇರಿನ
ದಳಕೆ ತಾನೊತ್ತಾಗಿ ರಣದ
ಗ್ಗಳೆಯರಿದ್ದುದು ರಾಯನೊಡಹುಟ್ಟಿದರು ಸಂದಣಿಸಿ ೧೭

ಅರನೆಲೆಯ ಸುಯಿಧಾನ ಬಾಹ್ಲಿಕ
ತರಣಿಸುತ ಗುರುಸೂನು ಕೃತವ
ರ್ಮರಿಗೆ ಕೃಪ ದುಶ್ಶಾಸನಾದ್ಯರಿಗಿದಿರಿನಾರೈಕೆ
ಎರಡು ಕೆಲದಲಿ ಶಲ್ಯ ಶಕುನಿಗ
ಳಿರವು ಸೇನೆಯ ಸುತ್ತುವಳಯದ
ಭರವ ಕೈಕೊಂಡೊಡ್ಡ ವೆರೆದನು ಗರುಡಿಯಾಚಾರ್ಯ ೧೮

ಹಿಳುಕ ತಿರುಹುತ ಸಮ್ಮುಖದ ಬಲ
ದಳವಿಯಲಿ ಗಿರಿಯಂತೆ ಸೈಂಧವ
ಬಿಲುದುಡುಕೆ ವೋಹರಿಸಿದರು ಭೂರಿಶ್ರವಾದಿಗಳು
ದಳದ ಕೆಲಬಲದೊಳಗೆ ನೃಪ ಸಂ
ಕುಲವ ನಿಲಿಸಿದನಮಮ ಕಾಲನ
ಬಳಗಕೌತಣವೆನಲು ಪದ್ಮವ್ಯೂಹ ರಂಜಿಸಿತು ೧೯

ಏನ ಹೇಳುವೆನದನು ನೃಪ ತವ
ಸೂನುವಿನ ವೋಹರದೊಳಳ್ಳಿರಿ
ವಾನೆಗಳನುಪ್ಪರಿಸಿ ಗಗನವ ಮೊಗೆವ ಕುದುರೆಗಳ
ಆ ನೃಪರ ವಾಜಿಗಳ ಗಿರಿ
ಸಾನು ಸಡಿಲಲು ಜಡಿವ ಭೇರಿ
ಧ್ವಾನವನು ಪಯದಳದ ಸುಭಟರ ಸಿಂಹಗರ್ಜನೆಯ ೨೦

ಮೇಳವದಲೆನ್ನಾನೆಗಳ ಬರ
ಹೇಳು ಸುಭಟರೊಳಗ್ಗಳರ ಬರ
ಹೇಳು ಬಿಂಕಕೆ ಮೆರೆವ ಭೀಮಾರ್ಜುನರ ಬರಹೇಳು
ಲೋಲುಪತೆಯವನಿಯಲಿಹರೆ ಬರ
ಹೇಳು ಯಮನಂದನನನಿಂದಿನ
ಕಾಳೆಗಕ್ಕೆಂದಿತ್ತ ಭಟ್ಟರನಟ್ಟಿದನು ದ್ರೋಣ ೨೧

ತುರಗ ಹಲ್ಲಣಿಸಿದವು ಸಮರ
ದ್ವಿರದ ಸಜ್ಜಂಬಡೆದವೊಗ್ಗಿನ
ತುರಗದಲಿ ಹೂಡಿದವು ರಥ ಕಾಲಾಳು ಮುಂಕೊಳಿಸಿ
ಅರಸನನುಜರು ಸಹಿತ ಕೃಷ್ಣನ
ಬೆರಳ ಸನ್ನೆಯೊಳೈದೆ ಬಿಡೆ ಮೋ
ಹರಿಸಿ ನಿಂದುದು ಮುರಿದ ಮಕರವ್ಯೂಹ ರಚನೆಯಲಿ ೨೨

ಬಂದು ಸಮಸಪ್ತಕರ ದೂತರು
ನಿಂದರರ್ಜುನನಿದಿರಲೇಳೈ
ನಂದಗೋಪನ ಮಗನ ಬಿಡು ನೆರವಿಂಗೆ ಕರೆ ಹರನ
ಇಂದು ರಣದಲಿ ಬದುಕಿದರೆ ನೀ
ನೆಂದಿಗೆಯುಂ ಬದುಕಿದನೆ ನಿಂದಿರು
ನಿಂದಿರೆಂದವಗಡಿಸಿ ಹಿಡಿದರು ಫಲುಗುಣನ ಸೆರಗ ೨೩

ಖರೆಯರಹಿರುಂಟುಂಟು ನೆರವನೆ
ಕರಸಿಕೊಂಡೇ ಬಹೆನೆನುತ ರಿಪು
ಚರರ ಕಳುಹಲು ದ್ರೋಣನಟ್ಟಿದ ದೂತರೈತಂದು
ಕರೆದರರ್ಜುನನನು ವೃಕೋದರ
ಧರಣಿಪತಿ ಮಾದ್ರೇಯ ಹೈಡಿಂ
ಬರಿಗೆ ನೂಕದು ಪಾರ್ಥ ಪದ್ಮವ್ಯೂಹವಿಂದಿನಲಿ ೧೪

ಶಿವನ ಬೇಡಿದ ಶರವ ತೆಗೆ ಗಾಂ
ಡಿವವ ಬಿಗಿ ನಿನ್ನಿಷ್ಟದೈವವ
ತವಕದಲಿ ನೀ ಬೇಡಿಕೊಂಬುದು ಪರಮಸದ್ಗತಿಯ
ಅವರಿವರ ಹವಣಲ್ಲ ಗುರು ಮುನಿ
ದವಗಡಿಸಿದರೆ ನಿಲುವನಾವನು
ಬವರಕೇಳೇಳೆಂದು ಜರಿದರು ದೂತರರ್ಜುನನ ೧೫

ಚರರ ಕಳುಹಿದನಸುರವೈರಿಗೆ
ಕರವ ಮುಗಿದನು ಪಾರ್ಥನೀ ಸಂ
ಗರದೊಳಗೆ ನಿಮ್ಮಡಿಯ ಚಿತ್ತದೊಳಾವ ಥಟ್ಟಿನಲಿ
ಬೆರಸುವೆವು ನಾವಿಂದಿನೀ ಮೋ
ಹರದ ಮುರಿವಸದಳ ನಿಧಾನಿಸ
ಲರಿದೆನಲು ಮನದೊಳಗೆ ನಿಶ್ಚೈಸಿದನು ಮುರವೈರಿ ೧೬

ಅಳಿಯನೀ ಮೋಹರದೊಳಲ್ಲದೆ
ಫಲುಗುಣನ ಮಗನಿವನು ಬಲುಗೈ
ಯುಳುಹ ಬಾರದು ಕಾಯಿದರೆ ಕಲಿಯುಗಕೆ ಗತಿಯಿಲ್ಲ
ಫಲುಗುಣನ ನಾವಿತ್ತಲೊಯ್ದರೆ
ಬಳಿಕ ನಿರ್ಣಯವೆಂದು ಮನದಲೆ
ತಿಳಿದು ಪಾರ್ಥಂಗೆಂದನಸುರಾರಾತಿ ನಸುನಗುತ ೧೭

ಗುಣಕೆ ಹುರುಡೇ ನಿನ್ನ ಮಗನೀ
ರಣವ ಬಗೆವನೆ ಸೂರ್ಯನಾರೋ
ಗಣೆಗೆ ಸೊಡರೇ ಸಾಕಿದೇತಕೆ ಬಯಲ ಭಂಡತನ
ಕೆಣಕು ನಡೆ ಸಮಸಪ್ತಕರನೀ
ಬಣಗುಗಳ ಕೊಂಬನೆ ಕುಮಾರಕ
ನಣಕವಲ್ಲೆಂದಸುರರಿಪು ತಿರುಹಿದನು ನಿಜರಥವ ೧೮

ಹರಿ ಸಹಿತ ಕಲಿ ಪಾರ್ಥನತ್ತಲು
ತಿರುಗಿದನು ಬಳಿಕಿತ್ತಲೀ ಮೋ
ಹರ ಮಹಾಂಭೋನಿಧಿಗೆ ಮೊಗಸಿತು ಸರ್ವತೋಮುಖರು
ಮೊರೆವ ಪಟಹ ಮೃದಂಗ ಘನ ಜ
ರ್ಜರಿತವಹ ನಿಸ್ಸಾಳ ಚಯದ
ಬ್ಬರಣೆ ಗಬ್ಬರಿಸಿದುದು ಕಮಲಭವಾಂಡ ಖರ್ಪರವ ೧೯

ಉರವಣಿಸಿದರು ನಕುಲ ಸಾತ್ಯಕಿ
ವರ ವಿರಾಟ ದ್ರುಪದ ಕೈಕೆಯ
ಬಿರುದ ಧೃಷ್ಟದ್ಯುಮ್ನ ಕುಂತೀಭೋಜ ಮೊದಲಾಗಿ
ಧರಣಿಪರು ಥಟ್ಟೈಸಿ ರಿಪು ಮೋ
ಹರಕೆ ಕವಿದುದು ಕಾದಿ ದುರ್ಗವ
ಮುರಿಯಲರಿಯದೆ ಮುರಿವುತಿದ್ದುದು ಬಸಿವ ರಕ್ತದಲಿ ೨೦

ಸುಳಿದು ಹರಿ ಮೇಖಲೆಯ ಮೋಹರ
ದೊಳಗೆ ಮುಗ್ಗಿದಿರೈ ಮಹಾ ಮಂ
ಡಳಿಕರಿರ ಫಡ ಹೋಗಿರೈ ನೀವೆನುತ ಖಾತಿಯಲಿ
ಬಿಲುದುಡುಕಿ ಪವಮಾನ ನಂದನ
ನಳವಿಗೊಟ್ಟನು ಹೂಣೆ ಹೊಕ್ಕರಿ
ಬಲವನಿರಿದನು ಘಾಯವಡೆದನು ಘೋರ ಸಮರದಲಿ ೨೧

ಕಾದಲೆನ್ನಳವಲ್ಲ ಬಲ ದು
ರ್ಭೇದವಿದು ಶಿವಶಿವಯೆನುತ್ತ ವೃ
ಕೋದರನು ಮರಳಿದನು ದುಗುಡಕೆ ತೆತ್ತು ನಿಜಮುಖವ
ಕೈದೆಗೆಯೆ ರಿಪುಬಲದ ಸುಭಟರು
ಕಾದಿದನು ಕಲಿ ಭೀಮ ಗೆಲಿದನು
ಪೋದನೆಂದರು ಕೂಡೆ ಕೈಗಳ ಹೊಯ್ದು ತಮತಮಗೆ ೨೨

ಆ ಮಹಾ ಮೋಹರವನೊಡೆಯಲು
ಸೋಮಕುಲಜರು ಭೀತರಾದರು
ಹಾ ಮಹಾದೇವೆನುತ ಧರ್ಮಜ ನೋಡಿ ತಲೆದೂಗಿ
ರಾಮನರಿವನು ಕೃಷ್ಣನರಿವನು
ಸೀಮೆಯಲಿ ಕಲಿ ಪಾರ್ಥನರಿವನು
ಭೂಮಿಪತಿಗಳೊಳುಳಿದ ಸುಭಟರಿಗರಿವುದಿಲ್ಲೆಂದ ೨೩

ಹೋಗಲು ಬಲ್ಲನು ಹೊಕ್ಕವೊಲು ಹೆರ
ದೆಗೆಯಲರಿಯನು ವೀರ ಪಾರ್ಥನ
ಮಗನು ಮತ್ತಯ್ದನೆಯ ಸುಭಟರ ಕಾಣೆ ನಾನೆನುತ
ಅಗಿವ ಚಿಂತೆಯೊಳರಸ ಕದನದ
ದುಗುಂಡ ಭಾರದಲಿರಲು ಮುಂಗೈ
ನಿಗಳವನು ತಿರುಹುತ್ತ ನಸು ನಗುತೆದ್ದನಭಿಮನ್ಯು ೨೪

ಜನಪನಂಘ್ರಿಗೆ ಮಣಿದು ಕೈಮುಗಿ
ದೆನಗೆ ಬೆಸಸೈ ಬೊಪ್ಪ ತಾ ಬ
ಲ್ಲೆನು ಮಹಾಹವದೊಳಗೆ ಪದ್ಮವ್ಯೂಹ ಭೇದನವ
ಅನುವರವ ಗೆಲುವೆನು ಕೃತಾಂತನ
ಮನೆಗೆ ಕಳುವೆನಹಿತರನು ನೀ
ನಿನಿತು ಚಿಂತಿಸಲೇಕೆ ಕಾಳೆಗಕೆನ್ನ ಕಳುಹೆಂದ ೨೫

ಹಸುಳೆಯಂದಟಿನ ನುಡಿಯು ಕೇಳಿದು
ನಸು ನಗುತ ಧರ್ಮಜನು ಘನ ಪೌ
ರುಷವು ನಿನಗುಂಟೆಂದು ಕಂದನ ತೆಗೆದು ಬಿಗಿಯಪ್ಪಿ
ಶಿಶುವು ನೀನೆಲೆ ಮಗನೆ ಕಾದುವ
ರಸಮ ಬಲರು ಕಣಾ ಮಹಾ ರಥ
ರೆಸುಗೆಯನು ನೀನೆಂತು ಸೈರಿಸಲಾಪೆ ಹೇಳೆಂದ ೨೬

ಸುಳಿಯಬಹುದಂಬುಧಿಯ ನಡುವಣ
ಸುಳಿಯೊಳಗೆ ಸಂವರ್ತಕನ ಕೊರ
ಳೊಳಗೆ ಕುಣಿಯಲುಬಹುದು ಮೃತ್ಯುವಿನಣಲ ಹೊಳಲೊಳಗೆ
ಮೊಳಕಬಹುದಹಿಪನ ಫಣಾ ಮಂ
ಡಳದೊಳಾಡಲುಬಹುದು ಕಾಣೆನು
ಗೆಲುವ ಹದನನು ಮಗನೆ ಪದ್ಮವ್ಯೂಹದೊಡ್ಡಣೆಯು ೨೭

ಬಿಡು ಮರೀಚಿಯ ತೊರೆಗೆ ಹರುಗೋ
ಲಿಡುವರುಂಟೇ ಲೆಪ್ಪದುರಗನ
ಹಿಡಿವಡೇತಕೆ ಗರುಡಮಂತ್ರವು ಚಪಲನೆನ್ನದಿರು
ಕೊಡನ ಮಗನ ಕುಮಂತ್ರದೊಡ್ಡಿನ
ಕಡಿತಕಾನಂಜುವೆನೆ ವೆಗ್ಗಳ
ನುಡಿಯಲಮ್ಮೆನು ತನ್ನನೀಗಳೆ ಬಿಟ್ಟು ನೋಡೆಂದ ೩೮

ಅವರೊಳಗಲಕೆ ನಿಂದ ರಿಪುಗಳ
ಜವನ ಬೋನವ ಮಾಡದಿದ್ದರೆ
ಅವನಿಯನು ಗೆಲದೇ ಮಹಾರಥರೆನಿಪ ನಾಯಕರ
ಅವನಿಯೊಳಗೊರಗಿಸದೆ ಮಾರಾಂ
ತವರ ನುಂಗದೆ ಮಾಣ್ದೆನಾದರೆ
ದಿವಿಜಪತಿತನಯಂಗೆ ತಾ ಜನಿಸಿದವನಲ್ಲೆಂದ ೩೯

ಕಂದ ವೈರಿ ವ್ಯೂಹವಸದಳ
ವೆಂದೆನಿಪುದದರೊಳಗೆ ಕೃಪ ಗುರು
ನಂದನರು ರಾಧೇಯ ಭೂರಿಶ್ರವ ಜಯದ್ರಥರು
ಇಂದುಧರನಡಹಾಯ್ದರೊಮ್ಮಿಗೆ
ಹಿಂದು ಮುಂದೆನಿಸುವರು ನೀ ಗೆಲು
ವಂದವೆಂತೈ ಸಮರವಿದು ಸಾಮಾನ್ಯವಲ್ಲೆಂದ ೪೦

ಗಾಳಿ ಬೆಮರುವುದುಂಟೆ ವಹ್ನಿ
ಜ್ವಾಲೆ ಹಿಮಕಂಜುವುದೆ ಮಂಜಿನ
ಮೇಲುಗಾಳೆಗವುಂಟೆ ಬಲುಬೇಸಗೆಯ ಬಿಸಿಲೊಳಗೆ
ಬಾಲನಿವನೆನ್ನದಿರು ದುಗುಡವ
ತಾಳಲಾಗದು ಬೊಪ್ಪ ನಿಮ್ಮಡಿ
ಯಾಲಿಗಳಿಗೌತಣವನಿಕ್ಕುವೆನೊರಸಿ ರಿಪುಬಲವ ೪೧

ಅಹುದು ಮಗನೆ ಸಮಗ್ರಬಲ ನೀ
ನಹೆ ನಿಧಾನಿಸಲಿಂದು ಪವನಜ
ನಹವ ಮುರಿದರು ಕಾಯ್ದು ಬಿಟ್ಟರು ನಕುಲ ಸಾತ್ಯಕಿಯಂ
ಸಹಸ ದ್ರುಪದ ವಿರಾಟರುಗಳು
ಮ್ಮಹವ ಸೆಳೆದರು ವಿಜಯ ಗರ್ವದ
ಲಿಹ ಬಲವ ನೀನೊಬ್ಬನೇ ಸಾಧಿಸುವುದರಿದೆಂದ ೪೨

ಧರಣಿಪತಿ ಕೇಳುಳಿದ ಪುಷ್ಪದ
ಪರಿಮಳವು ಪಥಿಸಿದರೆ ಸಂಪಗೆ
ಯರರಳ ಪರಿಮಳ ಪಥ್ಯವೇ ತುಂಬಿಗಳ ತಿಂತಿಣಿಗೆ
ಅರಿಭಟರು ಭೀಮಾದಿಗಳ ಗೆಲಿ
ದಿರಲಿ ಹೊಲ್ಲಹವೇನು ಘನ ಸಂ
ಗರದೊಳಗೆ ನನ್ನೊಡನೆ ತುಡುಕಿದಡರಿಯಬಹುದೆಂದ ೪೩

ಕೈದುಕಾರರ ಬಿಗುಹು ಘನ ನೀ
ಹೊಯ್ದು ಮೊದಲಲಿ ಬಿಡಿಸು ಬಳಿಕಾ
ವೈದಿ ನಿನ್ನನು ಕೂಡಿಕೊಂಬೆವು ಹೊಕ್ಕು ಬಳಿಸಲಿಸಿ
ಎಯ್ದೆ ಹಗೆಯಲಿ ಹೂಣಿ ಹೊಗದಿರು
ವೈದೆಗೆದು ಕಾದುವುದು ಜಯಸಿರಿ
ಯೈದೆತನ ನಿನ್ನಿಂದ ಮೆರೆವುದು ಕಂದ ಕೇಳೆಂದ ೪೪

ಕೆತ್ತುಕೊಂಡಿರೆ ಬಿಡಿಸುವೆನು ರಥ
ವೆತ್ತಲುರುಬಿದರತ್ತ ಕಣನೊಳು
ಮತ್ತಗಜ ಮುರಿದಂತೆ ಕದಡುವೆನಹಿತ ಮೋಹರವ
ಹೊತ್ತಿ ಹೊಗೆವ ಪರಾಕ್ರಮಾಗ್ನಿಯು
ತುತ್ತು ಪದ್ಮವ್ಯೂಹ ದೇವರು
ಚಿತ್ತಯಿಸುವುದು ಹೊತ್ತುಗಳೆಯದೆ ಎನ್ನ ಕಳುಹೆಂದ ೪೫

ಶರನಿಧಿಯ ವಡಬಾನಳನ ದ
ಳ್ಳುರಿಯ ವರ್ಮವ ತಿವಿವ ತುಂಬಿಗೆ
ಮರಳುದಲೆಯುಂಟಾದಡದು ಭವಭವದ ಪುಣ್ಯಫಲ
ಅರಿಬಲವ ನೀ ಖಂಡಿಗಳೆ ಮೋ
ಹರ ಸಹಿತ ನಾ ಬಹೆನು ನಡೆಯೆಂ
ದರಸನಭಿಮನ್ಯುವಿಗೆ ನೇಮವ ಕೊಟ್ಟನಾಹವಕೆ ೪೬

ಶಿವಶಿವಾ ಶಿಶುವಿವನು ರಿಪುಗಳು
ಜವನ ಜೂಜೆನಿಸುವ ಮಹಾರಥ
ನಿವಹಕೊಬ್ಬನೆ ಗಡ ಸಮಾಹಿತವಲ್ಲ ಸಮರಂಗ
ಅವನಿಪತಿ ನಿರ್ದಯನಲಾ ಕಂ
ಡೆವು ಕುಮಾರನನಿಕ್ಕಿ ಬಹ ರಾ
ಜ್ಯವನು ಸುಡು ಸುಡಲೇತಕೆಂದುದು ನಿಖಿಳ ಪರಿವಾರ ೪೭

ಲಲಿತ ಚಂದ್ರಿಕೆಗೇಕೆ ದಾವಾ
ನಳನ ಖಾಡಾಖಾಡಿ ಸುರಲತೆ
ಯೆಳೆಯ ಕುಡಿ ಮುರಿದೊತ್ತಲಾಪುದೆ ವಜ್ರಧಾರೆಗಳ
ನಳಿನ ನಾಳವು ಗಜದ ಕೈಯೊಡ
ನಳವಿಗೊಡಲಂತರವೆ ಪಾಪಿಗ
ಳೆಳಮಗನ ನೂಕಿದರು ಕಾಳೆಗಕೆಂದುದಮರಗಣ ೪೮

ಬಿಗಿದ ಗಂಡುಡಿಗೆಯಲಿ ಹೊನ್ನಾ
ಯುಗದ ಹೊಳೆವ ಕಠಾರಿಯನು ಮೊನೆ
ಮಗುಚಿ ಸಾಧು ಜವಾಜಿ ಕತ್ತುರಿ ಗಂಧಲೇಪದಲಿ
ಮಗಮಗಿಪ ಹೊಂದೊಡರ ಹಾರಾ
ದಿಗಳಲೊಪ್ಪಂಬಡೆದು ನಸುನಗೆ
ಮೊಗದ ಸೊಂಪಿನಲಾಹವಕ್ಕನುವಾದನಭಿಮನ್ಯು ೪೯

ಉಲಿವ ಘಂಟೆಯ ಕುಣಿವ ತುರಗಾ
ವಳಿಯ ಗಗನದೊಳಗಿವ ಬಿರುದಿನ
ಪಳಹರದ ತೆತ್ತಿಸಿದ ಕನಕದ ಚೌಕ ಸತ್ತಿಗೆಯ
ಘುಳಘುಳಿಪ ಚೀತ್ಕಾರ ಕೋಳಾ
ಹಳದ ಸೂತನ ರೇಖೆಯಲಿ ಭಟ
ಕುಲಲಲಾಮನ ತೇರು ಬಂದುದು ತೀವಿದಸ್ತ್ರದಲಿ ೫೦

ತುರಗ ತತಿಗಭಿನಮಿಸಿ ರಥವನು
ತಿರುಗಿ ಬಲವಂದೆರಗಿ ಚಾಪಕೆ
ಕರವ ನೊಸಲಲಿ ಚಾಚಿ ಭಾರಿಯ ಭುಜವನೊದರಿಸುತ
ಅರಸಗಭಿವಂದಿಸುತ ಭೀಮನ
ಹರಕೆಗಳ ಕೈಕೊಳುತ ನಕುಲಾ
ದ್ಯರಿಗೆ ಪೊಡವಟ್ಟಡರಿದನು ನವರತುನಮಯ ರಥವ ೫೧

ಸೂಳವಿಸಿದವು ಲಗ್ಗೆಯಲಿ ನಿ
ಸ್ಸಾಳತತಿ ಸಿಡಿಲೆರಗಿತೆನಲು
ಬ್ಬಾಳು ಮಿಗೆ ಕೈನೆಗಹಿ ಕೈವಾರಿಸುವ ಗಮಕಿಗಳು
ಸಾಲ ಹೆಗ್ಗಹಳೆಗಳು ರಿಪು ಭೂ
ಪಾಲಕರ ಬೈಬೈದು ಗಜರಿದ
ವಾಳುತನದಾಳಾಪು ಬೀರಿತು ಬೆರಗನಹಿತರಿಗೆ ೫೨

ಒಡನೆ ಕಳುಹುತ ಬಂದನಾ ನೆಲ
ದೊಡೆಯನನುಜರು ಸಹಿತ ನಯನದಿ
ಬಿಡುವನಿಯ ಸಾಲಿನಲಿ ನನೆದರು ಬಂದು ಕಿರಿದೆಡೆಯು
ನಡೆ ವಿಜಯನಾಗೆಂದು ತನುವನು
ತಡವಿದರು ಕಡುಮೋಹವೆಡೆಯಲಿ
ಘುಡುಘುಡಿಸೆ ಶಿಶು ಬೀಳುಕೊಂಡನು ಪಿತೃಚತುಷ್ಟಯವ ೫೩

ಎಲೆ ಕುಮಾರಕ ಹರ ಕುಮಾರಂ
ಗಳವಿಯಲಿ ನಿಲಲರಿದು ಕೊರಳಿನ
ಬಲುಹನರಿಯದೆ ಗಿರಿಯ ಹೊರಲಂಘೈಸುವರೆ ಭಟರು
ಬಲುಗುಡಿಯನೀ ಕರ್ಣನೀ ಕೃಪ
ನಲಘು ಭುಜಬಲ ದ್ರೋಣನೀ ವೆ
ಗ್ಗಳೆಯ ಜಯದ್ರಥನೆಂದು ಸಾರಥಿ ತೂಗಿದನು ಶಿರವ ೫೪

ಮರುಳು ಸಾರಥಿ ನಮ್ಮ ನಾವ್ ಪತಿ
ಕರಿಸಿಕೊಳಲಾಗದು ಕಣಾ ನೀ
ನರಿಯೆ ನಮ್ಮಂತರವ ನಾವಿನ್ನಾಡಿ ಫಲವೇನು
ಗುರುತನುಜನೇ ಕೃಪನೆ ದ್ರೋಣನೆ
ತರಣಿತನಯನೆ ಸೈಂಧವನೆ ಹುಲು
ನರರು ಗಣ್ಯವೆ ಕೇಳು ಭಾಷೆಯನೆಂದನಭಿಮನ್ಯು ೫೫

ಬವರವಾದರೆ ಹರನ ವದನಕೆ
ಬೆವರ ತಹೆನವಗಡಿಸಿದರೆ ವಾ
ಸವನ ಸದೆವೆನು ಹೊಕ್ಕಡಹುದೆನಿಸುವೆನು ಭಾರ್ಗವನ
ಜವನ ಜವಗೆಡಿಸುವೆನು ಸಾಕಿ
ನ್ನಿವರವರಲೇನರ್ಜುನನು ಮಾ
ಧವನು ಮುನಿದಡೆ ಗೆಲುವೆನಂಜದೆ ರಥವ ಹರಿಸೆಂದ ೫೬

ಬಾಲನೆನ್ನದಿರೆನುತ ರಿಪುಭಟ
ಭಾಳಲೋಚನನೆನಿಸುವರ್ಜುನ
ಬಾಳುಗೆನುತುದ್ದಂಡ ಕೋದಂಡವನು ಜೇವೊಡೆಯೆ
ಮೇಲು ಜಗವಲ್ಲಾಡಿದವು ಕೊರ
ಳೋಳಿ ಕೆದರಿತು ಕುಸಿದನಹಿ ಪಾ
ತಾಳ ಗೂಳೆಯ ತೆಗೆಯಲಳ್ಕಿರಿಯಿತ್ತು ಬಿಲು ರಭಸ ೫೭

ಸುರನದಿಗೆ ಶಿವನಾಯ್ತು ಮಕರಾ
ಕರಕೆ ಕಳಶಜನಾಯ್ತು ತರಣಿಗೆ
ಅರಿ ವಿಧುಂತುದನಾಯ್ತು ರಥಪದತಳಿತ ಧೂಳಿಯಲಿ
ಅರರೆ ಸತ್ವ ರಜಸ್ತಮಂಗಳೊ
ಳೆರಡು ಗುಣವಡಗಿತು ರಜೋ ಗುಣ
ದುರುಳಿಯಾದುದು ಲೋಕವೆನೆ ಘಾಡಿಸಿತು ಪದಧೂಳಿ ೫೮

ಆರ ರಥವಿದು ಸೈನ್ಯ ಪಾರಾ
ವಾರಕಿದನಂಘೈಸುವನು ತ್ರಿಪು
ರಾರಿಯೋ ಮೇಣಾ ತ್ರಿವಿಕ್ರಮನೋ ಸುರೇಶ್ವರನೊ
ವೀರನಹನೋ ಪೂತು ರಣದ ದೊ
ಠಾರನಿವನಾರೆನುತ ತರುಬಿಯೆ
ತೋರಹತ್ತರು ತಾಗಿದರು ಸೌಬಲ ಜಯದ್ರಥರು ೫೯

ಘಡ ಜಯದ್ರಥ ಹೋಗು ಹೋಗಳ
ವಡಿಕೆಯಲ್ಲಿದು ಸಾರು ಸೌಬಲ
ಮಿಡುಕಿದಡೆ ಮರುಳಹಿರಿ ಲೇಸಲ್ಲೆಮ್ಮೊಳತಿಮಥನ
ತುಡುಕಿದರೆ ಕೈ ಬೇವುದೀ ಬಲು
ಗಡಿಯತನ ಬಯಲಹುದೆನುತ ತಡೆ
ಗಡಿದು ಬಿಸುಟನು ಭಟರ ಹಯ ರಥ ಧನುವ ಸಾರಥಿಯ ೬೦

ರಥ ಮುರಿದು ಮನನೊಂದು ಸುಮಹಾ
ರಥರು ಹಿಮ್ಮೆಟ್ಟಿದರು ಬಳಿಕತಿ
ರಥಭಯಂಕರನೊಡೆದು ಹೊಕ್ಕನು ವೈರಿವೋಹರವ
ಮಥನದಲಿ ಮುರಿಯೊಡೆದ ಶೈಲ
ವ್ಯಥಿತ ಸಾಗರದಂತೆ ಬಿರಿದವು
ರಥನಿಕರ ಕಾಲಾಳು ಕುದುರೆಗಳೊಂದು ನಿಮಿಷದಲಿ ೬೧

ಐದನೆಯ ಸಂಧಿ

ಸೂ. ವೀರ ರಿಪುಕದಳೀವನಕೆ ಮದ
ವಾರಣನು ಫಲುಗುಣನ ತನಯನು
ದಾರ ಪದ್ಮವ್ಯೂಹದಲಿ ಗೆಲಿದನು ಕುಮಾರಕರ

ಅವಧರಿಸು ಧೃತರಾಷ್ಟ್ರ ನೃಪ ಸೈಂ
ಧವನ ಗೆಲಿದಾ ವ್ಯೂಹ ಭೇದಾ
ಹವವಿಜಯ ವಿಜಯಾತ್ಮಕನ ಕೌತುಕ ರಣೋದಯುವ
ತಿವಿದನುರುಬುವ ರಥ ಪದಾತಿಯ
ಕವಿವ ಗರುವ ತುರಂಗಗಳ ಬಲು
ಜವದ ರಥ ಕೋಟ್ಯಾನುಕೋಟಿಯ ಹೊದರ ಹೊಸ ಮೆಳೆಯ ೧

ಹರಿಯ ಚಕ್ರ ವರೂಥ ಚಕ್ರದೊ
ಳುರವಣಿಪ ತೇಜಿಗಳ ಕಡುಹಿನ
ಖುರದ ಹೊಯ್ಲಲಿ ವಿಲಯ ಪವನನ ಗರಿಯ ಗಾಳಿಯಲಿ
ಹರನ ನಯನಜ್ವಾಲೆ ಪಾರ್ಥಿಯ
ಸರಳ ಕಿಡಿಯಲಿ ಪಲ್ಲಟಿಸೆ ಸಂ
ಗರದೊಳಗೆ ಸೈವರಿದು ಸದೆದನು ಸಕಲ ಸೈನಿಕರ ೨

ಮಿಕ್ಕು ನೂಕುವ ಕುದುರೆಕಾರರು
ತೆಕ್ಕೆಗೆಡೆದರು ಸಂದಣಿಸಿ ಕೈ
ಯಿಕ್ಕಿದಾನೆಯನೇನನೆಂಬೆನು ಕಾಣೆನಳವಿಯಲಿ
ಹೊಕ್ಕು ಹರಿಸುವ ರಥ ಪದಾತಿಯ
ನೊಕ್ಕಲಿಕ್ಕಿದನಮಮ ಮಗುವಿನ
ಮಕ್ಕಳಾಟಿಕೆ ಮಾರಿಯಾಯಿತು ವೈರಿ ರಾಯರಿಗೆ ೩

ಕದಳಿಯೊಳು ಮದದಾನೆ ಹೊಕ್ಕಂ
ದದಲಿ ಹೆಚ್ಚಿದ ಚಾತುರಂಗದ
ಮೆದೆಯನೊಟ್ಟಿದು ಹೂಣೆ ಹೊಕ್ಕನು ಥಟ್ಟನೊಡೆತುಳಿದು
ಇದಿರೊಳೆಚ್ಚನು ಕೆಲಬಲದೊಳಿಹ
ಕದನಗಲಿಗಳ ಸೀಳಿದನು ಕಾ
ದಿದನು ಕಾಲನ ಲೀಲೆಯಾದುದು ವಿಷಮ ಸಮರಂಗ ೪

ಜೋಡೊಡೆದು ಥಟ್ಟುಗಿದು ಬೆನ್ನಲಿ
ಮೂಡಲದಟರ ಸೀಳಿದನು ಖುರ
ಜೋಡು ಹುಡಿಹುಡಿಯಾಗೆ ತೇಜಿಯ ಥಟ್ಟ ಖಂಡಿಸಿದ
ನೋಡಲಮ್ಮುವರಿಲ್ಲ ಮಿಂಗೆ ಕೈ
ಮಾಡಲಮ್ಮುವರಿಲ್ಲ ಬಲವ
ಲ್ಲಾಡಿತೊಬ್ಬನೆ ಹಸುಳೆ ಹೊಕ್ಕನು ವೈರಿ ಮೋಹರವ ೫

ಆವ ವಹಿಲದೊಳಂಬ ತೊಡಚುವ
ನಾವ ವೇಗದೊಳಿದಿರಲೆಸುವನ
ದಾವ ನಿರುತದಲೊಡ್ಡುವನು ಕೊರಳಿಂಗೆ ಕೋಲುಗಳ
ಆವ ದೃಢತೆಯೊ ದೃಷ್ಟಿವಾಳವಿ
ದಾವ ಗರುಡಿಶ್ರಮವೆನುತ ದಿವಿ
ಜಾವಳಿಗಳುಲಿಯಲು ವಿಭಾಡಿಸಿದನು ರಿಪುವ್ರಜವ ೬

ಎಡದಲೌಕುವ ರಾವುತರ ವಂ
ಗಡವನೆಚ್ಚನು ಸಮ್ಮುಖದೊಳವ
ಗಡಿಸುವಿಭ ಕೋಟಿಗಳ ಕೊಂದನು ಸರಳ ಸಾರದಲಿ
ಕಡುಗಿ ಬಲದಲಿ ಕವಿವ ರಥಿಕರ
ಕೆಡಹಿದನು ಕಾಲಾಳು ತೇರಿನ
ಗಡಣ ಹುಡಿಹುಡಿಯಾಯ್ತೆನಲು ಸವರಿದನು ಪರಬಲವ ೭

ಉರವಣಿಸಿದರು ಮತ್ತೆ ಭಟರ
ಬ್ಬರವ ಖತಿಯಲಿ ನಿಖಿಳ ಮನ್ನಂ
ತರದ ಕಡೆಯಲಿ ನೆಲನನದ್ದುವ ಕಡಲ ಕಡುಹಿನಲಿ
ಸರಳು ಕಡಿದವು ಸಕುತಿ ಸೆಲ್ಲೆಹ
ಪರಶು ಕವಿದವು ಖಡ್ಗ ತೋಮರ
ಸಂರಗಿ ಹೊಳೆದವು ಕೈದು ಹೇರಿದವಖಿಳ ದೆಸೆಗಳಲಿ ೮

ತೊಲಗಿರೈ ಕಾಲಾಳು ಮೇಲಾ
ಳಳವಿಗೊಡಲಿ ಮಹಾರಥರು ಮುಂ
ಕೊಳಲಿ ಜೋದರು ದಿಟ್ಟರಾದರೆ ಕವಿಸಿ ಕರಿಘಟೆಯ
ಕೆಲದ ದೊರೆಗಳು ಬರಲಿ ಮಾರಿದ
ತಲೆಯ ಭಂಡವ ಹೊತ್ತಿರದೆ ಕೈ
ಕೊಳಲಿ ಕರ್ಣಾದಿಗಳೆನುತ ಹೊಕ್ಕೆಚ್ಚನಭಿಮನ್ಯು ೯

ಕಾರಗಲಿಸಿದನಮಮ ರಾಜ ಕು
ಮಾರ ಕಂಠೀರವನು ರಿಪು ಪರಿ
ವಾರವನು ನಡೆಗೊಳಿಸಿದನು ಯಮರಾಜನಾಲಯಕೆ
ಮಾರಿ ಮೊಗವಡದೆರೆದಳೋ ಕೈ
ವಾರವೋ ತರುವಲಿಗಿದೆತ್ತಣ
ವೀರವೋ ಶಿವ ಎನುತ ಬೆರಗಾಯಿತ್ತು ಸುರಕಟಕ ೧೦

ಕೊಡೆನೆಗೆದವಟ್ಟೆಗಳು ರಕುತದ
ಕಡಲೊಳರೆಜೀವದ ಭಟರು ಬಂ
ಯ್ಯಿಡುತ ತೇಕಾಡಿದರು ಮುಂಡದ ಹಿಂಡು ಮುಳುಗಾಡೆ
ಅಡಸಿ ನೆಗೆವಾನೆಗಳ ತಲೆಗಳ
ಗಡಣ ಮೆರೆದವು ಮಿಕ್ಕ ತೇಜಿಯ
ಕಡಿಕುಗಳು ಕುಣಿದಾಡಿದವು ಕಿಗ್ಗಡಲ ರಕುತದಲಿ ೧೧

ಕರಿಘಟೆಯ ಕಲಕಿದನು ಹಯ ಮೋ
ಹರವ ಜರುಹಿದನೌಕಿ ಹರಿತಹ
ವರ ರಥವ ಹುಡಿಮಾಡಿದನು ಕೆಡಹಿದನು ಕಾಲಾಳ
ಹುರಿಯೊಡೆದು ಮೈದೆಗೆದು ಸಲೆ ಕೈ
ಮರೆದು ಕೈದುವ ಹಾಯ್ಕಿ ಪಡೆ ಮೊಗ
ದಿರುಹಲೆಚ್ಚನು ಕೊಚ್ಚಿದನು ಕೌರವ ಚತುರ್ಬಲವ ೧೨

ತಳಿತ ಹೊಗರಿನ ಬಾಯಿ ಧಾರೆಯ
ಹೊಳಹುಗಳ ಹೊಸ ಮಸೆಯ ತಳಪದ
ಬೆಳಗುಗಳ ಬಲಿದಿಂಗಲೀಕ ಸುವರ್ಣ ರೇಖೆಗಳ
ಲುಳಿಯ ಹಂಗನ ಗರಿಯ ಬಿಗುಹಿನ
ಹಿಳುಕುಗಳ ಹೊಗರಂಬು ಕವಿದವು
ತುಳುಕಿದವು ತೂರಿದವು ಕೆದರಿದವಹಿತ ಬಲದಸುವ ೧೩

ಅಳವಿಗೆಡೆ ಧುಮ್ಮಿಕ್ಕಿ ರಥದವ
ರಿಳಿಯ ಬಿದ್ದರು ಭಯದಿ ತೇಜಿಯ
ನಿಳಿದು ರಾವ್ತರು ಕರವ ಮುಗಿದರು ಕೊರಳ ಸಲಹೆನುತ
ಗುಳವ ಸಡಿಲಿಸಿ ಹಾಯ್ಕಿ ಜೋದಾ
ವಳಿಗಳಿಳಿದುದು ಕೈಯ ಕೈದುವ
ನಿಳುಹಿ ಬಾಯಲಿ ಬೆರಳನಿಟ್ಟುದು ವೈರಿ ಪಾಯದಳ ೧೪

ಎಸಳ ಮೊನೆ ಮೋಹರದ ಸಂದಣಿ
ಯಿಂಸಿರನುಳಿದುದು ಕೇಸರಾಕೃತಿ
ಯಸಮ ವೀರರು ಪಥಿಕರಾದರು ಗಗನ ಮಾರ್ಗದಲಿ
ನುಸುಳಿದರು ಕರ್ಣಿಕೆಯ ಕಾಹಿನ
ವಸುಮತೀಶರು ರಾಯನರನೆಲೆ
ದೆಸೆಗೆಡಲು ಮೊಳಗಿದನು ಪಾರ್ಥಕುಮಾರನಳವಿಯಲಿ ೧೫

ಜರಿದುದಬ್ಜವ್ಯೂಹ ನೂಕಿದ
ಕರಿ ತುರಗ ಕಾಲಾಳು ತೇರಿನ
ಮರಳುದಲೆ ತಾನಿಲ್ಲ ನೆರೆ ನುಗ್ಗಾಯ್ತು ಕುರುಸೇನೆ
ದೊರೆಗಳಹ ದ್ರೋಣಾದಿಗಳು ಕೈ
ಮರೆದು ಕಳೆದರು ಪಾರ್ಥತನಯನ
ಸರಿಯೊರೆಗೆ ಭಟನಾವನೆಂದನು ಕೌರವರ ರಾಯ ೧೬

ತಂದೆ ಹಡೆಯುನೆ ಮಗನನಹುದೋ
ಕಂದ ಕಲ್ಪ ಸಹಸ್ರ ನೋಂತಳೊ
ಇಂದುಧರನನು ನಿನ್ನ ತಾಯಿ ಸುಭದ್ರೆಯಲ್ಲದಡೆ
ಇಂದಿನೀ ಬಲವೀ ಸಮರ ಜಯ
ದುಂದವೀ ಸೌರಂಭವೀ ಸರ
ಳಂದವೀ ತೆರಳಿಕೆಯದಾವಂಗೆಂದನವನೀಶ ೧೭

ಹುರುಡು ಮರೆದೆನು ಮಗನೆ ಸಾಲದೆ
ಭರತಕುಲದಲಿ ನಿನ್ನ ಬೆಳವಿಗೆ
ಯೆರಡು ಕವಲನ್ವಯಕೆ ಕೊಡದೇ ಸುಗತಿ ಸಂಪದವ
ಕರುಳು ಬೀಳವೆ ತನ್ನ ಬಸುರಿಂ
ದುರುಳಿದವದಿರಲೇನು ಫಲ ಮ
ತ್ಸರವೆ ಪಾರ್ಥ ಕೃತಾರ್ಥನೆಂದನು ಕೌರವರ ರಾಯ ೧೮

ಎನುತ ಬಿಲುದುಡುಕಿದನು ಸೇನಾ
ವನಧಿಗಭಯವನಿತ್ತು ಮರಳುವ
ಜನಪರನು ಜರೆದೆಡಬಲದ ಮನ್ನೆಯರ ಮೂದಲಿಸಿ
ಮೊನೆಗಣೆಯ ತೂಗುತ್ತ ನರ ನಂ
ದನನ ರಥವನು ತರುಬಿ ನಿನ್ನಯ
ತನಯನಡ್ಡೈಸಿದನು ಕೌರವ ರಾಯ ಖಾತಿಯಲಿ ೧೯

ಮಗುವು ನೀ ಕೆಡಬೇಡ ಹೋಗೆನು
ತಗಣಿತಾಸ್ತ್ರವ ಸುರಿವುತೈತರೆ
ನಗುತ ನಿಂದಭಿಮನ್ಯು ನುಡಿದನು ಕೌರವೇಶ್ವರನ
ಮಗುವು ತಾನಹೆ ತನ್ನ ಬಾಣಕೆ
ಮಗುವುತನ ಬೇರಿಲ್ಲ ನೋಡೆಂ
ದಗಲದಲಿ ಕೂರಂಬ ಸುರಿದನು ಪಾರ್ಥನಂದನನು ೨೦

ಎಸಲು ಕಣೆ ಮುಕ್ಕುರುಕಿದವು ಹೊಸ
ಮಸೆಯ ಧಾರೆಯು ತೋರ ಕಿಡಿಯಲಿ
ಮುಸುಕಿತರಸನ ತೇರು ತಳಿತವು ಮೆಯ್ಯೊಳಂಬುಗಳು
ಬಸಿವ ರಕುತದ ಜರಿವ ಜೋಡಿನ
ನಸಿದ ಗರ್ವದ ನೆಗ್ಗಿದಾಳ್ತನ
ದೆಸಕದೊಣಗಿಲ ಬಾಯ ಭೂಪನ ಕಂಡನಾ ದ್ರೋಣ ೨೧

ರಾಯ ಸಿಲುಕಿದನಕಟಕಟ ರಾ
ಧೇಯ ನಡೆ ಕೃಪ ಹೋಗು ಮಗನೆ ನಿ
ಜಾಯುಧವ ಹಿಡಿ ಶಲ್ಯ ತಡೆಯದಿರೇಳು ಕೃತವರ್ಮ
ರಾಯನನುಜರು ಕೈದುಗೊಳಿ ರಣ
ದಾಯ ತಪ್ಪಿತು ನೃಪತಿ ಮಾರಿಯ
ಬಾಯ ತುತ್ತಾದನು ಶಿವಾ ಎಂದೊರಲಿದನು ದ್ರೋಣ ೨೨

ಮಾತು ಹಿಂಚಿತು ಮುಂಚಿ ಸುಭಟ
ವ್ರಾತ ಹೊಕ್ಕುದು ಸಿಕ್ಕಿದರಸನ
ಭೀತಿಯನು ಬಿಡಿಸಿದರು ಬೀರಿದರಂಬುಗಳ ಮಳೆಯ
ಸೋತೆವಾವ್ ನೀ ಗೆಲಿದೆ ನಿ
ಮ್ಮಾತಗಳನೀ ಭ್ರೂಣಹತ್ಯಾ
ಪಾತಕಕ್ಕಂಜುವೆನೆನುತ ಕೈಕೊಂಡನಾ ದ್ರೋಣ ೨೩

ರಾಯನನು ತೊಲಗಿಸಿದರಾ ಕ
ರ್ಣಾಯತಾಸ್ತ್ರರು ರಾಹುವಿನ ಕಟ
ವಾಯ ಚಂದ್ರನ ಸೆಳೆವವೊಲರಿದಾಯ್ತು ಸುಭಟರಿಗೆ
ಸಾಯಕವ ಸರಿಗೊಳಿಸಿದರು ವ
ಜ್ರಾಯುಧನ ಮೊಮ್ಮನ ರಥವ ನಿ
ರ್ದಾಯದಲಿ ಮುತ್ತಿದರು ಕುರುಸೇನಾ ಮಹಾರಥರು ೨೪

ಹಸುಳೆತನದಲಿ ಹರನ ಮಗನಾ
ವಿಷಮ ದೈತ್ಯನ ಸೀಳಿ ಬಿಸುಡನೆ
ಶಿಶುವಲಾ ಪ್ರದ್ಯುಮ್ನ ಮುರಿಯನೆ ಶಂಬರಾಸುರನ
ಶಿಶುವೆ ನೋಡಭಿಮನ್ಯು ಸುಭಟ
ಪ್ರಸರದಿನಿಬರನೊಂದು ಘಾಯದೊ
ಳುಸಿರ ತೆಗೆಬಗೆ ಮಾಡಿದನು ಧೃತರಾಷ್ಟ್ರ ಕೇಳೆಂದ ೨೫

ಗುರುಸುತನನೊಟ್ಟೈಸಿ ಶಲ್ಯನ
ಭರವಸವ ನಿಲಿಸಿದನು ಕೃಪನು
ಬ್ಬರದ ಗರ್ವವ ಮುರಿದು ಕೃತವರ್ಮಕನ ನೋಯಿಸಿದ
ಅರಸನನುಜರ ಸದೆದು ಬಾಹ್ಲಿಕ
ದುರುಳ ಸೌಬಲ ಸೋಮದತ್ತರ
ಹುರುಳುಗೆಡಿಸಿದನೊಬ್ಬ ಶಿಶು ಗೆಲಿದನು ಮಹಾರಥರ ೨೬

ಮುಳುಗಿದನು ಮರುಮೊನೆಯ ಮೈ
ಗಳ ಮಹಾರಥರಾಜಿ ಕದನದ
ನೆಲನ ಬಿಡೆ ಖತಿಗೊಂಡು ಮುರಿದೋಡುವರ ಮೂದಲಿಸಿ
ಬಿಲುದುಡುಕಿ ಸಾರಥಿಗೆ ಸೂಚಿಸಿ
ಮಲೆತ ನೋಡೈ ಮಗುವು ಘಡ ಘಡ
ತೊಲಗು ತೊಲಗೆಂದೆನುತ ರಿಪುವನು ತರುಬಿದನು ಕರ್ಣ ೨೭

ಗಾರುಗೆಡೆದರೆ ಮೆರೆಯದೋಲೆಯ
ಕಾರತನವೆಮ್ಮೊಡನೆ ನೀ ಮೈ
ದೋರಿ ಮಡಮುರಿವಿಲ್ಲದೆಚ್ಚಾಡಿದರೆ ಸಫಲವಿದು
ತೋರುವೆನು ಕೈಗುಣವನೆನುತೈ
ದಾರು ಶರದಲಿ ಕರ್ಣನೆದೆಯನು
ಡೋರುಗಳೆಯಲು ಬಳಲಿದನು ಪೂರಾಯ ಘಾಯದಲಿ ೨೮

ಬೆದರಿ ಭೂಕಂಪದಲಿ ಕುಲಗಿರಿ
ಯದಿರುವಂತಿರೆ ಚರಿಸಿ ಕಾಯವ
ಬಿದಿರಿ ಮರಳುವ ಕಂಗಳಲಿ ಕಲಿಕರ್ಣ ಮೈಮರೆಯೆ
ಕೆದರಿತೀ ಬಲವಕಟ ಕರ್ಣನ
ಸದೆದನೋ ಸಾಹಸಿಕ ಶಿಶು ಕಾ
ದಿದೆವು ನಾವಿನ್ನೆನುತಲಿರೆ ಕಲಿ ಶಲ್ಯನಿದಿರಾದ ೨೯

ಬಾಲಕನೆ ಹಿಮ್ಮೆಟ್ಟು ಹಿಮ್ಮೆ
ಟ್ಟಾಳುತನವೆಮ್ಮೊಡನೆಯೇ ಮರು
ಳೇಳಿಗೆಯಲುಬ್ಬೆದ್ದು ಕರ್ಣನ ಸದೆದ ಗರ್ವದಲಿ
ಮೇಲನರಿಯಾ ಶಲ್ಯನೊಡನೆಯು
ಕಾಳಿಗವೆ ನಿಮ್ಮಯ್ಯನಿಂದಿನ
ಲೂಳಿಗವ ತಹುದೆನುತ ಸುರಿದನು ಸರಳ ಸರಿವಳೆಯ ೩೦

ಬಾಲತನವೇನೂಣಯವೆ ಕ
ಟ್ಟಾಳುತನವಾಭರಣವವನೀ
ಪಾಲ ಸುತರಿಗೆ ವಿದ್ಯವೇ ವಿಪ್ರರಿಗಲಂಕಾರ
ಆಳಿನಂಗವನೆತ್ತ ಬಲ್ಲೆ ಶ
ರಾಳಿಯಲಿ ನಿನ್ನಂಘವಣೆಯ ಛ
ಡಾಳತನವನು ಮುದ್ರಿಸುವೆನೆನುತೆಚ್ಚನಭಿಮನ್ಯು ೩೧

ಸರಳ ಸರಳಲಿ ಕಡಿದು ಸವೆಯದೆ
ಸರಿ ಮಿಗಿಲ ಕಾದಿದರೆ ಶಲ್ಯನ
ಧರಧುರದ ದೆಖ್ಖಾಳತನವನು ಕಂಡು ಖಾತಿಯಲಿ
ಸರಳು ಹದಿನೈದರಲಿ ಶಲ್ಯನ
ಬರಿಯ ಕೆತ್ತಿದನೈದು ಬಾಣದೊ
ಳುರವ ತೋಡಿದನೊಂದು ನಿಮಿಷಕೆ ಶಲ್ಯ ಸೈಗೆಡೆದ ೩೨

ತಲೆ ತಿರುಗಿ ತುಟಿಯೊಣಗಿ ಕಂಗಳ
ಬಳೆ ಮರಳಿ ಬಸವಳಿಯೆ ಸಾರಥಿ
ತೊಲಗಿಸಿದನಾ ರಥವನೊಡಹುಟ್ಟಿದನ ವೇದನೆಯ
ನಿಲುಕಿ ಕಂಡನು ಶಲ್ಯನನುಜನು
ಹಿಳುಕು ಹಿಳುಕಿನ ಮೇಲೆ ಸಂಧಿಸಿ
ಮುಳಿದೆಸುತ ತಾಗಿದನು ಖತಿಯಲಿ ಪಾರ್ಥನಂದನನ ೩೩

ಪೂತು ಶಲ್ಯನ ತಮ್ಮನೇ ಮಾ
ರಾಂತನಣ್ಣನ ಹರಿಬವನು ದಿಟ
ಸೂತ ನೋಡೈ ಸಾಹಸಿಕನೈ ಲೇಸು ಲೇಸೆನುತ
ಆತನಂಬೈದಾರ ಮನ್ನಿಸಿ
ಸೋತವೊಲು ಮನಗೆಲವ ಮಾಡಿ ನಿ
ಶಾತ ಶರದಿಂದಿಳುಹಿದನು ಶಲ್ಯಾನುಜನ ಶಿರವ ೩೪

ದೊರೆ ಮಡಿಯೆ ಮಾದ್ರಾನುಜನ ಬಲ
ತಿರುಗಿತಭಿಮನ್ಯುವಿನ ಹೊಯ್ಲಲಿ
ಹುರುಳುಗೆಟ್ಟುದು ಹೆಸರ ನಾಯಕವಾಡಿ ದುಗುಡದಲಿ
ತರಹರವ ನಾ ಕಾಣೆನೀ ಮೋ
ಹರಕೆ ಗತಿಯೇನೆನುತ ಭರದಲಿ
ಕರೆದು ತೋರಿದನಾ ಕೃಪಾಚಾರ್ಯಂಗೆ ಕಲಿ ದ್ರೋಣ ೩೫

ಮಗುವೆ ನೋಡಭಿಮನ್ಯು ನಮಗಿದು
ಹೊಗುವಡಳವೇ ಕಾಲರುದ್ರನ
ತಗಹು ಬಿಟ್ಟಂತಿದೆ ಕುಮಾರನ ಕೋಪದಾಟೋಪ
ಮೊಗಸಲರಿದು ಭುಜಪ್ರತಾಪದ
ಹೊಗರು ಹೊಸಪರಿಯೆನುತ ರಿಪುಗಳ
ಹೊಗಳುತಿರೆ ಕೇಳಿದನು ಕೌರವ ರಾಯನೀ ನುಡಿಯ ೩೬

ಕೇಳುತಿರ್ದೈ ಕರ್ಣ ಸಲೆ ನ
ಮ್ಮಾಳ ಬೆದರಿಸಿ ನುಡಿದು ರಿಪು ಭಟ
ನಾಳನೇರಿಸಿ ನುಡಿವ ಬಾಹಿರರೇನ ಹೇಳುವೆನು
ಖೂಳರೆಂಬೆವೆ ಗುರುಗಳಿಂದು ವಿ
ಶಾಲಮತಿಗಳು ತಮ್ಮ ಭಾಗ್ಯದ
ಮೇಲೆ ದೈವವನೆಂದು ಫಲವೇನೆನುತ ಬಿಸುಸುಯ್ದು ೩೭

ವೀರರಂಗವನೆತ್ತ ಬಲ್ಲರು
ಹಾರುವರು ಬೆಳುದಿಂಗಳಿನ ಬಿರು
ಸಾರ ಸುಡುವುದು ಕೈದು ಹಿಡಿದರೆ ಕಲಿಗಳೇ ದ್ವಿಜರು
ವೈರಿಭಟನಿವ ಮಗುವಲಾ ಮನ
ವಾರೆ ಕಾದಲು ಲಕ್ಷ್ಯವಿಲ್ಲೀ
ಯೂರುಗರ ಬೈದೇನು ಫಲವೆಂದರಸ ಹೊರವಂಟ ೩೮

ಎನಲು ದುಶ್ಶಾಸನನು ರಾಯನ
ಕನಲಿದನು ಖತಿಯೇಕೆ ಜೀಯಿಂ
ದೆನಗೆ ಬೆಸಸಾ ಸಾಕು ಭಂಡರ ಬೈದು ಫಲವೇನು
ದಿನಪ ದೀವಿಗೆಯಾಗಲುಳಿದೀ
ಬಿನುಗು ಬೆಳಗಿನ ಹಂಗು ಬೇಹುದೆ
ದನುಜ ದಿವಿಜರ ದಳಕೆ ತನ್ನನು ಬಿಟ್ಟು ನೋಡೆಂದ ೩೯

ತಳಿತುದೆಡಬಲವಂಕದಲಿ ಹೆ
ಬ್ಬಲ ಛಡಾಳಿಸಿ ಮೊರೆವ ಭೇರಿಯ
ಘುಳುಘುಳು ಧ್ವನಿ ಕೂಡೆ ಜಡಿದುದು ಕಮಲಜಾಂಡಘಟ
ಹಳವಿಗೆಯ ಸೀಗುರಿಯ ಚಮರಾ
ವಳಿಯ ವಿಮಳಚ್ಛತ್ರ ಪಙ್ತಿಯ
ವಳಯದಲಿ ನಭ ಮುಳುಗೆ ಮುತ್ತಿತು ಸೇನೆ ರಿಪುಭಟನ ೪೦

ತಿರುಹು ತೇಜಿಯನಿತ್ತಲಿವದಿರ
ನೊರಸಿ ದುಶ್ಶಾಸನನ ಬೆನ್ನಲಿ
ಕರುಳು ತೆಗೆವೆನು ನೋಡು ಸಾರಥಿ ಬೆಚ್ಚಬೇಡೆನುತ
ಅರಗಿನರಸನ ಬಾಗಿಲಲಿ ದ
ಳ್ಳುರಿಗೆ ತಡವೇ ಹೊಕ್ಕು ನಿಮಿಷದೊ
ಳೊರಸಿದನು ಚತುರಂಗ ಬಲವನು ಕೌರವಾನುಜನ ೪೧

ಎಲವೊ ಕೌರವ ಕೊಬ್ಬಿ ನರಿ ಹೆ
ಬ್ಬುಲಿಯ ಕೂಸನು ಬೇಡುವಂದದಿ
ಅಳವನರಿಯದೆ ಅಧಮ ರಥಿಕರ ಕೂಡೆ ತೊಡಕುವರೆ
ಮಲೆತು ನೀನೆನ್ನೊಡನೆ ರಣದಲಿ
ಹಳಚಿ ನೀ ತಲೆವೆರಸಿ ಮರಳಿದ
ಡಿಳುಹುವೆನು ಕೈದುವನು ಶರಸನ್ಯಾಸ ನನಗೆಂದ ೪೨

ಸಾಕು ತರುವಲಿತನದ ಮಾತುಗ
ಳೇಕೆ ಗುರುವರ ಮುಂದೆ ವೀರೋ
ದ್ರೇಕದಲಿ ಮೈಮರೆದು ರಣದಲಿ ಹೊಯ್ದು ಹೊಟ್ಟುಗರ
ಆ ಕಿರೀಟಿ ವೃಕೋದರರು ಮೈ
ಸೋಕಿದರೆ ಸಂತೋಷ ನೀನವಿ
ವೇಕಿ ಬಾಲಕನೇನ ಮಾಡುವೆನೆಂದನವ ನಗುತ ೪೩

ಕೊಳಚೆ ನೀರೊಳಗಾಳುತೇಳುತ
ಜಲಧಿ ಕಾಲ್ವೊಳೆಯೆಂಬ ಭಂಡರ
ಮುಳಿದು ಮಾಡುವುದೇನು ಮೊದಲಲಿ ನಮ್ಮ ನೀ ಗೆಲಿದು
ಬಳಿಕ ಭೀಮಾರ್ಜುನರ ಬಯಸುವು
ದೆಲೆ ಮರುಳೆ ನಿನ್ನೊಡಲ ಸೀಳಿಯೆ
ತಿಳಿ ರಕುತದಲಿ ತಾಯ ತುರುಬನು ನಾದಿಸುವೆನೆಂದ ೪೪

ಕಾತರಿಸದಿರು ಬಾಲ ಭಾಷೆಗ
ಳೀತಕಿವು ನೀ ಕಲಿತ ಬಿಲು ವಿ
ದ್ಯಾತಿಶಯವುಂಟಾದಡೆಮ್ಮೊಳು ತೋರು ಕೈಗುಣವ
ಭೀತ ಭಟರನು ಹೊಳ್ಳುಗಳೆದ ಮ
ದಾತಿರೇಕದ ಠಾವಿದಲ್ಲೆಂ
ದೀತನೆಚ್ಚನು ನೂರು ಬಾಣದಲಿಂದ್ರಸುತ ಸುತನ ೪೫

ಬಿಲ್ಲ ಹಿಡಿಯಲು ಕೌರವಾನುಜ
ಬಲ್ಲ ನೋಡೈ ಸೂತ ಮಿಗೆ ತ
ಪ್ಪಲ್ಲ ತಪ್ಪಲ್ಲಂಬು ಬಿದ್ದವು ಗುರಿಯ ಸರಿಸದಲಿ
ನಿಲ್ಲು ನಿಲ್ಲಾದರೆಯೆನುತ ಬಲು
ಬಿಲ್ಲನುಗುಳಿಸಿದನು ಶರೌಘವ
ನೆಲ್ಲಿ ನಭ ದೆಸೆಯೆತ್ತಲೆನೆ ಘಾಡಿಸಿದವಂಬುಗಳು ೪೬

ಅವನ ನೂರಂಬುಗಳ ಕಡಿದವ
ನವಯುವವ ಕೀಲಿಸಿದಡಾಕ್ಷಣ
ವವನಿಯಲಿ ಬಲುಗರುಳು ಬಿದ್ದವು ಭಟನ ಕಿಬ್ಬರಿಯ
ಅವಗಡಿಸಿ ಖಾತಿಯಲಿ ಖಳ ಶರ
ನಿವಹವನು ತುಡುಕಿದನು ಕೊಡಹಿದ
ವವನು ನಿಮಿಷದೊಳರ್ಜುನಾತ್ಮಕನಗಣಿತಾಸ್ತ್ರಗಳು ೪೭

ತಾಯ ತುರುಬಿಗೆ ಹಾಯ್ದ ಪಾತಕಿ
ನಾಯ ಕೊಂಡಾಡುವರೆ ಕೊಬ್ಬಿದ
ಕಾಯವನು ಕದುಕಿರಿದು ನೆತ್ತರ ನೊರೆಯ ಬಾಸಣಿಸಿ
ತಾಯ ಕರಸುವೆನೆನುತ ಕಮಳ ದ
ಳಾಯತಾಂಬಕನಳಿಯನನುಪಮ
ಸಾಯಕವ ಹೂಡಿದನು ನೋಡಿದನೊಂದು ಚಿತ್ರದಲಿ ೪೮

ಇವನ ಕೊಂದರೆ ತಂದೆ ಮಿಗೆ ಮೆ
ಚ್ಚುವನೊ ಮುನಿವನೊ ತನ್ನ ನುಡಿ ಸಂ
ಭವಿಸದೆಂಬನೊ ಭೀಮಸೇನನ ಭಾಷೆಗಂಜುವೆನು
ಇವನ ತಾನೇ ಕೊಲಲಿ ನಮಗಿ
ನ್ನಿವನ ತೊಡಕೇ ಬೇಡ ಕದನದೊ
ಳಿವನ ಭಂಗಿಸಿ ಬಿಡುವೆನೆಂದನು ತನ್ನ ಮನದೊಳಗೆ ೪೯

ಕಾಯ್ದುಕೊಳ್ಳೈ ಕೌರವಾನುಜ
ಹೊಯ್ದು ಹೋಗಲು ಬಹುದೆ ಹರನಡ
ಹಾಯ್ದಡೆಯು ಗೆಲುವೆನು ಕಣಾ ನಿಲ್ಲೆನುತ ತೆಗೆದೆಸಲು
ಬಾಯ್ದೆಗೆದು ಕೇಸುರಿಯ ಕಾರುತ
ಕೈದುವೆದೆಯಲಿ ಕೊಂಡು ಬೆನ್ನಲಿ
ಹಾಯ್ದುಡವನೋರ್ಗುಡಿಸಿದನು ಕುರುಸೇನೆ ಕಳವಳಿಸೆ ೫೦

ಅಹಹ ಕೈತಪ್ಪಾಯ್ತು ರಾಯನ
ಸಹಭವನು ನೊಂದನು ಶಿವಾ ಎನು
ತಹಿತ ಸುಭಟರು ಸರಿಯೆ ಸಾರಥಿ ತಿರುಹಿದನು ರಥವ
ಬಹಳ ಬಲ ನುಗ್ಗಾಯ್ತು ಶಿಶುವಿನ
ಸಹಸ ಕುಂದದೆನುತ್ತ ಖತಿಯಲಿ
ಮಿಹಿರಸುತನಡಹಾಯ್ದು ತಡೆದನು ಮತ್ತೆ ಬಾಲಕನ ೫೧

ಸಾರು ಸಾರಭಿಮನ್ಯು ಫಡ ಇ
ನ್ನಾರ ಬಸುರನು ಹೊಗುವೆ ನಿನ್ನವ
ರಾರ ಸಂತತಿ ಮಾಡಿಕೊಳಲಿ ಭವತ್ ಪರೋಕ್ಷದಲಿ
ಭೂರಿ ಬಲವನು ಸದೆವ ಗರ್ವವಿ
ದಾರ ಕೂಡೆ ಧನುರ್ಧರಾಗ್ರಣಿ
ವೀರ ಕರ್ಣ ಕಣಾ ಎನುತ ತೆಗೆದೆಚ ನತಿರಥನ ೫೨

ಬಲ್ಲೆನುಂಟುಂಟಖಿಳ ವೀರರೊ
ಳಿಲ್ಲ ಸರಿದೊರೆ ನಿನಗೆ ಬಾಯಲಿ
ಬಲ್ಲಿದನು ನೀನಹೆ ಭಟಾಂಗದ ಮಾತದಂತಿರಲಿ
ಒಳ್ಳೆ ಗಡ ಪಾವುಡವ ವಾಸುಗಿ
ಯಲ್ಲಿಗಟ್ಟಿತು ಗಡ ಮಹಾಹವ
ಮಲ್ಲ ಮಡ ಮುರಿಯದಿರೆನುತ ಹೊಕ್ಕೆಚ್ಚನಭಿಮನ್ಯು ೫೩

ಇರುಳುರಾಯನ ಮನೆಗೆ ಕಪ್ಪವ
ತೆರುವುದೋ ಹಗಲೆಲವೊ ಕೆಲಬರ
ನಿರಿದ ದರ್ಪವದಾರೊಡನೆ ಫಡ ಮರಳು ಮರಳೆನುತ
ಕಿರುಮೊನೆಯ ಮುಗುಳಂಬುಗಳ ಸೈ
ಗರೆದನಭಿಮನ್ಯುವಿನ ಮೆಯ್ಯಲಿ
ತುರುಗಿದವು ಮರಿದುಂಬಿ ಕೆಂದಾವರೆಗೆ ಕವಿವಂತೆ ೫೪

ಸುರಪನಂಕುಶವೌಕಿದರೆ ಮೆ
ಯ್ಯರಿಯದೈರಾವತಕೆ ಕಬ್ಬಿನ
ಲಿರಿದರಂಜಿಕೆಯುಂಟೆ ನಿನ್ನಯ ಕಣೆಗಳೌಕಿದರೆ
ತೆರಳುವನೆ ಅಭಿಮನ್ಯುವೆನುತ
ಬ್ಬರಿಸಿ ಕರ್ಣನ ಕಾಯವನು ಹುಗಿ
ಲಿರಿದನೆಂಟಂಬಿನಲಿ ತೋದುದು ತೇರು ರಕ್ತದಲಿ ೫೫

ಮಳೆಗೆ ಮೊಗದಿರುಹಂವುದೆ ಬಡಬಾ
ನಳನೆಲವೊ ನಿನ್ನಂಬು ತಾಕಿದ
ರಳುಕುವೆನೆ ತಾನೆನುತ ರವಿಸುತನೆಚ್ಚನತಿರಥನ
ಹಿಳುಕು ಕವಿದವು ಭಟನ ಕೈ ಮೈ
ಗಳಲಿ ಮಿನುಗಿದವಿರುಳು ಮರನಲಿ
ಹೊಳೆದು ಮುತ್ತಿದ ಮಿಂಚುಬುಳುವಿನ ಮಿನುಗಿನಂದದಲಿ ೫೬

ಹೂಣಿಗರು ಕೆಲರಿವರು ಇವದಿರ
ಗೋಣನರಿವರೆ ಇವರ ಜೀವದ
ಕೇಣಿಕಾರರು ಖಾತಿಗೊಂಬರು ಭೀಮ ಫಲುಗುಣರು
ಮಾಣದಿವದಿರು ಮತ್ತೆ ರಣದಲಿ
ಕಾಣೆನಿದಕಿನ್ನನುವನೆನುತ
ಕ್ಷೀಣಭುಜಬಲನೆಚ್ಚು ಕಡಿದನು ಸೂತಜನ ಧನುವ ೫೭

ಕೈದು ಮುರಿಯಲು ಮುಂದೆ ನೂಕದೆ
ಹಾಯ್ದನಾ ರವಿಸೂನು ಬಳಿಕಡ
ಹಾಯ್ದು ತಡೆದನು ಬವರವನು ಕರ್ಣಾತ್ಮಜನು ಕಡುಗಿ
ಐದು ಬಾಣದಲವನ ಕೊರಳನು
ಕೊಯ್ದನರ್ಜುನ ಸೂನುವಾತನ
ನೊಯ್ದರಂತಕದೂತರದ್ಭುತವಾಯ್ತು ಸಂಗ್ರಾಮ ೫೮

ಘಾಯವಡೆದನು ಶಲ್ಯ ರವಿಸುತ
ನಾಯುಧವ ಬಿಟ್ಟೋಡಿದನು ಕುರು
ರಾಯನನುಜನು ಬದುಕುವರೆ ಮೆಯ್ಯೆಲ್ಲ ಬಾದಣವು
ಸಾಯದುಳಿದವರಿಲ್ಲ ಮಿಕ್ಕಿನ
ನಾಯಕರೊಳಕಟೆನಲು ಕುರುಬಲ
ಬಾಯ ಬಿಡೆ ಶಲ್ಯನ ಕುಮಾರಕ ಹೊಕ್ಕನಾಹವವ ೫೯

ಆ ಕುಮಾರನ ಸೇನೆ ಗಡಣಿಸಿ
ನೂಕಿತುರವಣಿಸಿದುದು ತುರಗಾ
ನೀಕವಿಭತತಿ ತೂಳಿದವು ತುಡುಕಿದವು ರಥನಿಕರ
ತೋಕಿದವು ಕೈದುಗಳ ಮಳೆ ರಣ
ದಾಕೆವಾಳರ ಸನ್ನೆಯಲಿ ಸಮ
ರಾಕುಳರು ಕೆಣಕಿದರು ರಿಪುಕಲ್ಪಾಂತ ಭೈರವನ ೬೦

ಭಟ ಛಡಾಳಿಸಿದನು ಘೃತಾಹುತಿ
ಘಟಿಸಿದಗ್ನಿಯವೋಲು ರಣ ಚೌ
ಪಟ ಚತುರ್ಬಲದೊಳಗೆ ಹೊಕ್ಕನು ಸಿಂಹ ನಾದದಲಿ
ನಿಟಿಲ ನೇತ್ರನ ಕೋಪಶಿಖಿ ಲಟ
ಕಟಿಸುವಂತಿರೆ ಹೆಚ್ಚಿದತಿ ಬಲ
ದಟವಿಯನು ಸವರಿದುದು ಪಾರ್ಥಕುಮಾರ ಶರಜಾಲ ೬೧

ಧರೆ ಬಿರಿಯೆ ಬೊಬ್ಬೆಯಲಿ ಬಲದ
ಬ್ಬರಣೆ ದೆಖ್ಖಾದೆಖ್ಖೆಯಾಗಲು
ಧರಣಿಪತಿ ಮರುಗಿದನು ಮಗನೇನಾದನೋ ಎನುತ
ಕರೆದು ಭೀಮನ ನಕುಳನನು ಸಂ
ಗರಕೆ ಧೃಷ್ಟದ್ಯುಮ್ನ ದ್ರುಪದರ
ಪರುಠವಿಸಿ ಕಳುಹಿದನು ಸೌಭದ್ರಂಗೆ ಪಡಿಬಲವ ೬೨

ಗದೆಯ ತಿರುಹುತ ಸಿಂಹನಾದದ
ಲೊದರಿ ಮಗನಾವೆಡೆಯೆನುತ ನೂ
ಕಿದನು ರಥವನು ತನ್ನ ಸೇನೆಗೆ ಸೀಗುರಿಯ ಬೀಸಿ
ಅದಟನೈತರೆ ಹೋಗಲೀಯದೆ
ಮೊದಲ ಬಾಗಿಲ ಕಟ್ಟಿಕೊಂಡ
ಗ್ಗದ ಜಯದ್ರಥ ಭೀಮನೊಳು ಬಲುಗಾಳೆಗವ ಹಿಡಿದ ೬೩

ತೆರಹುಗೊಡು ಫಡ ಫಡ ಜಯದ್ರಥ
ಹೆರತೆಗೆದು ಸಾರೆನುತ ಹೂಣಿಗ
ನುರುಬಿದರೆ ಮಾರಾಂತು ಭೀಮನ ಕಡುಹ ನಿಲಿಸಿದನು
ಮರೆದು ಕಳೆಯಭಿಮನ್ಯುವನು ಮೈ
ಮರೆಯದೆನ್ನಲಿ ಕಾದು ಮಾತಿನ
ಬಿರುಬಿನಲಿ ಫಲವಿಲ್ಲೆನುತ ಕೆಂಗೋಲ ತೊಡಚಿದನು ೬೪

ಬವರದಲಿ ಕಲಿಪಾರ್ಥನಲ್ಲದೆ
ಪವನತನಯಾದಿಗಳ ಗೆಲುವರೆ
ಶಿವನ ಕೃಪೆಯೆನಗುಂಟು ಮುನ್ನೆನುತಾ ಜಯದ್ರಥನು
ಕವಲುಗೋಲಲಿ ಭೀಮನನು ಪರಿ
ಭವಿಸಿದನು ಸಹದೇವ ನಕುಳರ
ತಿವಿದು ಧೃಷ್ಟದ್ಯುಮ್ನ ಮೊದಲಾದಗಣಿತರ ಗೆಲಿದ ೬೫

ಪಡಿಬಲವ ಬರಲೀಯದನಿಲಜ
ನೊಡನೆ ಸೈಂಧವ ಕಾದುತಿರಲಿ
ಮ್ಮಡಿಸಿತಾಹವವಿತ್ತ ಮೋಹರ ಮಧ್ಯ ರಂಗದಲಿ
ಕಡುಗಿ ನೂಕುವ ಕದನ ರಾಗಿಗ
ಳೊಡನೆ ಕಾದುವ ಪಾರ್ಥತನಯನ
ಬಿಡಿ ಸರಳು ಬೀರಿದವು ರಮಣರನಮರ ವಧುಗಳಿಗೆ ೬೬

ತರಿದನಾನೆಯ ಥಟ್ಟುಗಳ ಮು
ಕ್ಕುರುಕಿದನು ಕಾಂಭೋಜ ತೇಜಿಯ
ನುರುಬಿ ಹೊಯ್ದನು ಸೂನಿಗೆಯ ತೇರುಗಳ ತಿಂತಿಣಿಯ
ಮುರಿದನೊಗ್ಗಿನ ಪಾಯ್ದಳವನ
ಳ್ಳಿರಿವ ಹೆಣ ಕುಣಿದಾಡೆ ಭಟ ಬೇ
ಸರದೆ ಕೊಂದನು ವೈರಿಸೇನೆಯನರಸ ಕೇಳೆಂದ ೬೭

ಒರಸಿದನು ಹದಿನೆಂಟು ಸಾವಿರ
ಕರಿ ಘಟೆಯನೈವತ್ತು ಸಾವಿರ
ತುರಗವನು ಮೂವತ್ತು ಸಾವಿರ ವರ ಮಹಾರಥರ
ಧುರದಿ ಲಕ್ಷ ಪದಾತಿಯನು ಸಂ
ಹರಿಸಿ ಶಲ್ಯ ಕುಮಾರಕನ ಕ
ತ್ತರಿಸಿದನು ಗೋನಾಳಿಯನು ದಿವ್ಯಾಸ್ತ್ರಧಾರೆಯಲಿ ೬೮

ಮಡಿದನಕಟಾ ತಮ್ಮ ಸಖನೆಂ
ದಡಸಿದಳಲಿನೊಳೆದ್ದ ಕೋಪದ
ಕಡುರ್ಝುಳದ ಕಾಲಾಗ್ನಿ ರುದ್ರನ ಕಣ್ಣ ಹೋಲುವೆಯ
ಸಿಡಿದ ಮೀಸೆಯ ಬಿಗಿದ ಹುಬ್ಬಿನ
ಜಡಿವ ರೋಮಾಂಚನದ ಖಾತಿಯ
ಕಡುಹುಕಾರರು ಮಸಗಿದರು ದುರ್ಯೋಧನಾತ್ಮಕರು ೬೯

ಚಂಡ ಭುಜಬಲನೊಡನೆ ಮಕ್ಕಳ
ತಂಡವೆದ್ದುದು ಬಿಗಿದ ಬಿಲ್ಲಿನ
ದಂಡವಲಗೆಯ ಮುಸುಡಿ ಮುದ್ಗ ಕಠಾರಿಯುಬ್ಬಣದ
ಗಂಡುಗಲಿಗಳು ಕವಿದರದಿರುವ
ಖಂಡಯದ ಮುಡುಹುಗಳ ಗಂಧದ
ಮಂಡನದ ಮೈಸಿರಿಯ ಪರಿಮಳ ಪೂರರೊಗ್ಗಿನಲಿ ೭೦

ತಳಿತ ಸತ್ತಿಗೆಗಳ ವಿಡಾಯಿಯ
ಲೊಲೆವ ಚಮರಿಯ ವಜ್ರ ಮಕುಟದ
ಹೊಳಹುಗಳ ಹೊಗೆ ಮೀಸೆಗೆದರಿನ ಬಿರುದಿನುಬ್ಬಟೆಯ
ಕೆಲಬಲದ ವೇಲಾಯತರ ವೆ
ಗ್ಗಳದ ರಾವ್ತರ ಗಡಣ ನಾಲಗೆ
ದಳೆದುದೆನೆ ಹೊಳೆಹೊಳೆವಡಾಯುಧ ಭಟರು ನೂಕಿದರು ೭೧

ಭಾಪುರೇ ಕೌರವನ ಸುತರಾ
ಟೋಪವೊಳ್ಳಿತು ಬಂದ ಬರವಿನ
ಚಾಪಳದಲೊದಗಿದರೆ ಲೇಸಲ್ಲಿದರ ಫಲವೇನು
ಕಾಪುರುಷರೇ ಕಾಣಬಹುದೆಂ
ದಾ ಪುರಂದರ ಸುತನ ಸುತ ನಿಜ
ಚಾಪವನು ನೇವರಿಸುತಿದ್ದನು ಬಗೆಯದರಿಬಲವ ೭೨

ಮಂಗುಳದಿರು ಶಲ್ಯಾತ್ಮಕನನುಗು
ಳುಗುಳು ನಿನ್ನಯ ಬಸಿರ ಸೀಳಿಯೆ
ತೆಗೆವೆವೆಮ್ಮಯ ಸಖನನೆನುತಾ ಲಕ್ಷಣಾದಿಗಳು
ತೆಗೆದೆಸುತ ಮೇಲಿಕ್ಕಿದರು ತಾ
ರೆಗಳು ನೆಣಗೊಬ್ಬಿನಲಿ ರಾಹುವ
ತೆಗೆದು ಬದುಕಲು ಬಲ್ಲವೇ ಧೃತರಾಷ್ಟ್ರ ಕೇಳೆಂದ ೨೩

ದಿಟ್ಟರೋ ಲಕ್ಷಣನವರು ಜಗ
ಜಟ್ಟಿಗಳಲಾ ರಾಜಕುಲದಲಿ
ಹುಟ್ಟಿದರೆ ಕೆಲರೀಸು ಚಪಳತೆ ಯಾರಿಗುಂಟೆನುತ
ಕಟ್ಟಿದನು ಕಣೆಗಳಲಿ ಸುತ್ತಲು
ತಟ್ಟಿವಲೆಗಳ ಸೋಹಿನಲಿ ಬೆ
ನ್ನಟ್ಟಿ ಪಾರ್ಥಕುಮಾರ ಸದೆದನು ವೈರಿಮೃಗ ಕುಲವ ೨೪

ಆ ಸುಯೋಧನ ಸುತರ ಸರಳ ವಿ
ಳಾಸವನು ಖಂಡಿಸಿದನವದಿರ
ಬೀಸರಕೆ ಬಂದಡ್ಡ ಬೀಳುವ ಭಟರ ಕೆಡೆಯೆಚ್ಚ
ರೋಷವಹ್ನಿಯ ಕೆದರೆ ಕವಿವ ಮ
ಹೀಶರನು ಮಾಣಿಸಿದನವನೀ
ವಾಸವನು ವಾಸವನ ಮೊಮ್ಮನುದಾರ ಸಮರದಲಿ ೨೫

ಘಡ ಕುಮಾರಕ ದೊದ್ದೆಗರ ಸದೆ
ಬಡಿದ ಗರ್ವಿತತನವಕಟ ನ
ಮ್ಮೊಡನೆಯೇ ನೋಡಿಲ್ಲಿ ಮೇಳವೆ ಸಾರು ಸಾರೆನುತ
ಒಡನೊಡನೆ ನಾರಾಚ ನಿಚಯುವ
ಗಡಣಿಸಿದರೇನೆಂಬೆನವರು
ಗ್ಗಡದ ಬಿಲು ವಿದ್ಯಾತಿಶಯವನು ಸಮರಭೂಮಿಯಲಿ ೨೬

ಸರಳ ಮೊನೆಯಲಿ ವೈರಿ ಸುಭಟರ
ಕರುಳ ತೆಗೆದನು ರಣದೊಳಾಡುವ
ಮರುಳ ಬಳಗವ ತಣಿಸಿದನು ಕಡಲಾದುದರುಣಜಲ
ತರಳನರೆಯಟ್ಟಿದನು ಧುರದಲಿ
ದುರುಳ ದುರಿಯೋಧನನ ಮಕ್ಕಳ
ಮರಳಲೀಯದೆ ಭಟರ ಕೇಣಿಯ ಕೊಂಡನಭಿಮನ್ಯು ೨೭

ಉರಗನಿಕ್ಕಡಿಗಾರ ಹುಲ್ಲಿನ
ಸರವಿಗಂಜುವುದುಂಟೆ ಕರ್ಣಾ
ದ್ಯರನು ಕಡ್ಡಿಗೆ ಬಗೆಯನೀ ಹೂಹೆಗಳ ಗಣಿಸುವನೆ
ಎರಡು ಶರದಲಿ ಲಕ್ಷಣನ ಸಂ
ಹರಿಸಿದನು ಹದಿನೈದು ಬಾಣದ
ಲರಿದನುಳಿದ ಕುಮಾರಕರನಭಿಮನ್ಯು ನಿಮಿಷದಲಿ ೨೮

ತಳಿತ ಚೂತದ ಸಸಿಗಳವನಿಗೆ
ಮಲಗುವಂತಿರೆ ರಾಜಪುತ್ರರು
ಹೊಳೆವ ಪದಕದ ಕೊರಳ ತಲೆಗಿಂಬಾದ ತೋಳುಗಳ
ಬಳಿರಕುತದಲಿ ನನೆದ ಸೀರೆಯ
ತಳಿತ ಖಂಡದ ಬಿಗಿದ ಹುಬ್ಬಿನ
ದಳಿತ ದಂಷ್ಟ್ರಾನನದಲೆಸೆದರು ಸಾಲ ಶಯನದಲಿ ೨೯

ಇಕ್ಕಿದಿರಲಾ ರಾಜಪುತ್ರರ
ನಕ್ಕಟಕಟಾ ಸ್ವಾಮಿದ್ರೋಹರು
ಹೊಕ್ಕಮನೆ ಹಾಳಹುದಲಾ ದ್ರೋಣಾದಿ ನಾಯಕರು
ಹಕ್ಕಲಾದುದು ನಮ್ಮ ಬಲ ಶಿಶು
ಸಿಕ್ಕನಿನ್ನೂ ಪಾಂಡವರ ಪು
ಣ್ಯಕ್ಕೆ ಸರಿಯಿಲ್ಲೆನುತ ಕೌರವರಾಯ ಗರ್ಜಿಸಿದ ೩೦

ಕುಲವ ನೋಡಿದಡಿಲ್ಲ ತನ್ನಯ
ಬಲುಹ ನೋಡಿದಡಿಲ್ಲ ಕದನದೊ
ಳುಳಿವ ನೋಡಿದರಿಲ್ಲಲಾ ಪತಿಯೆಂಬ ಪಾತಕಿಯ
ಇಳೆಯೊಳೋಲೆಯಕಾರರೆಂಬರ
ತಲೆಗೆ ತಂದನು ತೃಣವನೆಂದ
ಗ್ಗಳೆಯರನು ಮೂದಲಿಸಿ ಬಯ್ದನು ಸುಯ್ದು ಕುರುರಾಯ ೩೧

ಕೇಳುತಿದ್ದರು ಪತಿಯ ಮೂದಲೆ
ಗಾಳಿಯಲೆ ದಳ್ಳಿಸುವ ಶೌರ್ಯ
ಜ್ವಾಲೆ ಜಡಿದುದು ಖಾತಿಯಲಿ ಹೊಗರೇರಿದಾನನದ
ಅಳುತನವುಬ್ಬೆದ್ದು ಕಡು ಹೀ
ಹಾಳಿಕಾರರು ಕೈದು ಕೊಂಡರು
ಬಾಲಕನ ತರುಬಿದರು ದೊರೆಗಳು ಕೇಳು ಧೃತರಾಷ್ಟ್ರ ೩೨

ಆರನೆಯ ಸಂಧಿ

ಸೂ. ರಿಪುಕುಮಾರ ಕುಠಾರ ಧೀರನು
ಚಪಳ ನೃಪಸಂಹಾರ ಕಾಲನು
ವಿಪುಳ ಸಂಗ್ರಾಮದಲಿ ಮಡಿದನು ಫಲುಗುಣನ ತನಯು

ಮೇರೆದಪ್ಪಿತು ಕೌರವನ ಪರಿ
ವಾರದಲಿ ಬೇಹವರು ಮಕುಟದ
ಬಾರಿಯಾಳುಗಳಾಂತುಕೊಂಡರು ಪಾರ್ಥನಂದನನ
ಸೂರಿಯನ ಸುತ ಶಲ್ಯ ಗೌತಮ
ಕೌರವಾನುಜನುಭಯ ಕಟಕಾ
ಚಾರ್ಯನಶ್ವತ್ಥಾಮನಿವರೊಗ್ಗಾಯ್ತು ಷಡುರಥರು ೧

ಹೊಳೆವ ಸಿಂಧದ ಜಡಿವ ಕಹಳಾ
ವಳಿಯ ಲಗ್ಗೆಯ ವಿವಿಧ ವಾದ್ಯದ
ಕಳಕಳದ ಕಾಲಾಳ ಬೊಬ್ಬೆಯ ಬಹಳ ರಭಸದಲಿ
ಕಲಶ ಪಲ್ಲವ ಚೌಕದಲಿ ಮಂ
ಡಳಿಸಿದವು ಸತ್ತಿಗೆಗಳೊದರುವ
ಕೆಲಬಲದ ಶಂಖಾಳಿಯಲಿ ಸಂದಣಿಸಿತತಿರಥರು ೨

ಅಳವಿಗೊಟ್ಟುದು ಮತ್ತೆ ಕೌರವ
ಬಲಪಯೋನಿಧಿ ವೈರಿ ಬಡಬನ
ಬಿಲು ಸರಳು ಬಿರುಗಿಡಿಯಲೌಕಿತು ಚಾತುರಂಗದಲಿ
ಎಲೆಲೆ ಬೆಂಗಾಹಿನಲಿ ನೂಕುವ
ಬಲ ಸಮರ್ಥರ ಜೋಕೆಯಲಿ ಕುರು
ಬಲಕೆ ಕದನಾಳಾಪವಾಯ್ತೆನುತೆಚ್ಚನಭಿಮನ್ಯು ೩

ಎಸಲು ತಲೆವರಿಗೆಯಲಿ ಕವಿದುದು
ದೆಸೆಯ ಹಳುವಿಂಗೌಕುವತಿರಥ
ರುಸುರುಮಾರಿಗಳೇರಿ ಹೊಯ್ದರು ರಾಯ ರಾವುತರು
ನುಸುಳಿದರು ನಾಚಿಕೆಯಲಾತನ
ವಿಶಿಖ ಜಲದಲಿ ತೊಳೆದರತಿರಥ
ರಸಮ ಸಂಗರವಾಯ್ತು ಮತ್ತಭಿಮನ್ಯುವಿದಿರಿನಲಿ ೪

ಹಳಚಿ ಮುರಿದುದು ವೀರ ಕರ್ಣನ
ಬಲ ಕೃಪಾಚಾರಿಯರ ಸೇನೆಗೆ
ತಲೆಯ ಋಣ ಸಂಬಂಧ ಸವೆದುದು ಕಾತರಿಸ್ಪಿ ಕವಿವ
ಬಲದ ಬಿರುದರಿಗಮರ ನಾರಿಯ
ರೊಳಗೆ ಸೇರುವೆಯಾಯ್ತು ಶಲ್ಯನ
ಬಲದಡಗು ಸವಿಯಾಯ್ತು ಜಂಬುಕ ಕಾಕ ಸಂತತಿಗೆ ೫

ಕೆಡೆದ ರಥ ಸಲೆ ಕಾಂಚನಾದ್ರಿಯ
ನಡಸಿದವು ನಾಚಿಕೆಯನಭ್ರದೊ
ಳಿಡಿಯೆ ತಲೆ ಬೀರಿದವು ಭಂಗವನನುಪಮಾಂಬರಕೆ
ಕಡಲುವರಿವರುಣಾಂಬು ಜಲಧಿಗೆ
ಬಿಡಿಸಿದವು ಬಿಂಕವನು ಶಿವ ಶಿವ
ನುಡಿವ ಕವಿ ಯಾರಿನ್ನು ಪಾರ್ಥ ಕುಮಾರನಾಹವವ ೬

ಪಡೆಯು ತೆಗೆ ತರುವಲಿಯ ಕೊಲ್ಲದೆ
ಹಿಡಿಯೆನುತ ಬಿರುಸರಳ ತಿರುವಿನ
ಲಡಸಿ ಸೂತರಿಗರುಹಿ ಕೆಲಬಲದವರ ಕೈವೀಸಿ
ಕಡುಮನದ ಕೈಚಳಕಿಗರು ಮುಂ
ಗುಡಿಯಲೈತರೆ ರವಿಸುತಾದಿಗ
ಳೊಡನೊಡನೆ ಕೈಕೊಂಡರಿಂದ್ರಕುಮಾರ ನಂದನನ ೭

ಶಿಶುತನದ ಸಾಮರ್ಥ್ಯ ಸಾಕಿ
ನ್ನೆಸದಿರೆಲವೋ ಮರಳು ಮರಳೆಂ
ದೆಸಮ ಬಲರೈದಿದರು ಷಡುರಥರೊಂದು ಮುಖವಾಗಿ
ಎಸುಗೆ ನಿಮಗೆಂದಾಯ್ತು ನಿದ್ರೆಯ
ಮುಸುಕಿನಲಿ ಗೋಗ್ರಹಣದಲಿ ಜೀ
ವಿಸಿದ ಜಾಣರು ನೀವೆನುತ್ತಿದಿರಾದನಭಿಮನ್ಯು ೮

ತರಳತನದಲಿ ನುಡಿಯದಿರು ಸಂ
ಗರಕೆ ನಿಮ್ಮಯ್ಯನನು ಹೊಸ
ಸರಳು ನಾಚುವವಲ್ಲ ಶಿಶುವಧೆಯೆಂಬುದಪವಾದ
ಮರುಳುವುದು ಲೇಸೆನುತ ಷಡು ರಥ
ರುರವಣಿಸಿ ಬಿಗಿದ ಬಿಲ್ಲಿನ
ಗರುಡಿಕಾರನ ಕೂಡ ನೂಕಿತು ರವಿಸುತಾದಿಗಳು ೯

ಪಾರ್ಥ ಪರಿಯಂತೇಕೆ ಸಮರ
ವ್ಯರ್ಥಜೀವರು ನೀವು ಕೌರವ
ನರ್ಥವನು ಸಲೆ ತಿಂಬುದಲ್ಲದೆ ಸಮರ ನಿಮಗೇಕೆ
ಸ್ವಾರ್ಥ ಲೋಲುಪ್ತಿಯಲಿ ನಿಲುವ ಸ
ಮರ್ಥರಾದರೆ ಬಾಣ ಧಾರಾ
ತೀರ್ಥದೊಳಗೋಲಾಡಿಸುವೆನೆಂದೆಚ್ಚನಭಿಮನ್ಯು ೧೦

ಮನದ ಕೆಚ್ಚುಳ್ಳದಟನಹೆ ಮಾ
ತಿನ ಸಘಾಡಿಕೆ ಲೇಸು ಪಾರ್ಥನ
ತನಯನಲ್ಲಾ ಪೂತು ಪಾಯಿಕು ಎನುತ ಷಡುರಥರು
ತನತನಗೆ ಕೆಂಗೋಲಿನಲಿ ಮುಂ
ಮ್ಮೊನೆಯ ಬೋಳೆಯ ಸರಳಿನಲಿ ಸಾ
ಧನ ಸಮಗ್ರರು ಶಿಶುವನೆಚ್ಚರು ದೆಸೆದೆಸೆಗೆ ಕವಿದು ೧೧

ಮುಸಗಿ ಮದದಾನೆಗಳು ಸಿಂಹದ
ಶಿಶುವ ಮುತ್ತುವವೊಲು ಕವಿಕವಿ
ದೆಸುತ ಬಂದರು ಮಕುಟವರ್ಧನರಸಮ ಬಾಲಕನ
ನುಸುಳದವರವರಸ್ತ್ರವನು ಖಂ
ಡಿಸುತ ಸನ್ನಾಹದಲಿ ಘನ ಪೌ
ರುಷದಲೆಚ್ಚಾಡಿದನು ಹಲಬರ ಕೂಡೆ ಸುಕುಮಾರ ೧೨

ಕೋಡಿದನೆ ಕೊಂಕಿದನೆ ನಾಯಕ
ವಾಡಿಗಳು ಹಲರೆಂದು ಬೆಂಗೊ
ಟ್ಟೋಡಿದನೆ ಕೈಗಾಯದೆಚ್ಚನು ನಚ್ಚಿದಂಬಿನಲಿ
ತೋಡು ಬೀಡಿನ ಹವಣನಾತನ
ಮಾಡಿದಾತನೆ ಬಲ್ಲನೆನೆ ಕೈ
ಮಾಡಿ ಸುರಿದನು ಸರಳ ಮಳೆಯ ಮಹಾರಥರ ಮೇಲೆ ೧೩

ಪೂತು ಮಝ ಬಿಲ್ಲಾಳುತನವಿದು
ಭೂತನಾಥಂಗಿಲ್ಲ ಸುಭಟ
ವ್ರಾತವೀಕ್ಷಿಸಲರಿದೆನುತ ಕಣೆಗೆದರಿದನು ದ್ರೋಣ
ಏತಕಿದು ಹಿಮ್ಮೆಟ್ಟು ದಿಟ ನೀ
ಸೋತಡೆಯು ಜಯವಿಲ್ಲೆಮಗೆ ಮೃಗ
ಪೋತನನು ಹರಿಹೊಯ್ವುದುಚಿತವೆ ಮಗನೆ ಕೇಳೆಂದ ೧೪

ವಿನಯವೇಕಿದು ನಿಮ್ಮ ಭುಜಬಲ
ದನುವ ಬಲ್ಲೆನು ನಿಮ್ಮ ಕೈಮೈ
ತನದ ಹವಣನು ಕಾಬೆನೆನ್ನೊಳು ಸೆಣಸಿ ಜಯಿಸಿದರೆ
ಧನುವ ಹಿಡಿಯೆನು ಸಾಕು ಡೊಂಬನ
ಬಿನುಗು ನುಡಿಯಂತಿರಲಿ ಬಲ್ಲಡೆ
ಮೊನೆಗಣೆಯಲೇ ಮಾತನಾಡೆಂದೆಚ್ಚನಭಿಮನ್ಯು ೧೫

ಎಡದೊಳೌಕುವ ಕೃಪನನೆಚ್ಚನು
ತಡೆಯಲಶ್ವತ್ಥಾಮನನು ರಥ
ಕೆಡೆಯಲೆಚ್ಚನು ತೊಡಚಿ ಕೈಯಲಿ ಕೌರವಾನುಜನ
ಮಿಡುಕಲೆಚ್ಚನು ಹಿಂದು ಮುಂದವ
ಗಡಿಸಿದಾ ಮಾದ್ರೇಯ ರವಿಸುತ
ರೊಡಲೊಳಂಬನು ಹೂಳಿದನು ಸೀಳಿದನು ಸಮರಥರ ೧೬

ಅಡಸಿ ಹೊಕ್ಕರೆ ಕೃಪನ ರಥವನು
ಕಡಿದು ಬಿಸುಟನು ಗುರುಸುತನನಡಿ
ಮಿಡುಕಲೀಯದೆ ಬಿಗಿದು ಕರ್ಣನ ಧನುವ ಖಂಡಿಸಿದ
ಕೊಡಹಿದನು ಕೌರವನ ರಥವನು
ತುಡುಕಲೀಯದೆ ದ್ರೋಣನನು ಜವ
ಗೆಡಿಸಿದನು ಜೋಡಿಸಿದನು ಷಡುರಥರೊಗ್ಗನೊಡೆ ಹೊಯ್ದು ೧೭

ಮುರಿಮುರಿದು ಹಿಯ್ಯಾಳಿಯಲಿ ಮ]
ತ್ಸರವಣೆಸಿ ಗರಿಗಟ್ಟಿ ರಥಿಕರು
ಹುರಿಬಿಡದೆ ಬಿಗುಹಿನಲಿ ಭಾಷೆಯ ಮಾಡಿ ತಮ್ಮೊಳಗೆ
ಸರಳ ಸೂಸಿದರೆಡ ಬಲದಲ
ಬ್ಬರವ ಮಾಡಿದರೋಡಿದರು ಹಗೆ
ಯರುಣ ಜಲದಲಿ ನಾದಿದರು ನಿಶಿತಾಸ್ತ್ರ ಸಂತತಿಯ ೧೮

ಮಡಬಗೌತಣವಿಕ್ಕುವರೆ ಕಡ
ಲೊಡೆಯಗಹುದು ಸಮರ್ಥನಲ್ಲಾ
ಬಿಡುಗಣೆಯ ಬೀರುವರೆ ಕಟಕಾಚಾರ್ಯನೆಂದೆನುತ
ಕಡುಮೊನೆಯ ಕೂರಂಬುಗಳ ಮಿಗೆ
ಗಡಣಿಸಿದನೊಗ್ಗೊಡೆದ ಷಡುರಥ
ರೊಡಲೊಳಂಬನು ಹೂಳಿದನು ಕಾರಿದರು ಶೋಣಿತವ ೧೯

ಹೊಸಕದ ಶೌರಿಯದ ಬಾಳಿಕೆ
ಯೇಸು ದಿನವೈ ಕರ್ಣ ಕೃಪ ದು
ಶ್ಶಾಸನರ ಕೊಂಬನೆ ಕುಮಾರಕ ಸುರರಿಗಲಗಣಸು
ಘಾಸಿಯಾದರು ಘಾಯವಡೆದು ವಿ
ಳಾಸವಳಿದುದು ರಿಪುಭಟನ ಗೆಲು
ವಾಸೆ ಬೀತುದು ಧಾತುಗೆಟ್ಟುದು ಸರಳ ಸಾರದಲಿ ೨೦

ವಿರಥನಾದನು ಕರ್ಣನಂಬಿಗೆ
ತಿರುಹಿ ಬಿಲ್ಲನು ತೊಟ್ಟನಾ ಗುರು
ಗುರುತನೂಜನು ತನ್ನ ಸೂತನ ಶಿರವ ಹರಿಯೆಚ್ಚ
ಸುರಗಿಯನು ಬಿಸುಟೊರೆಯ ತಿರುಹಿದ
ನರಸನನುಜನು ಕೃಪನು ಶಲ್ಯನು
ಕೊರಳಲಸುಗಳ ಹಿಡಿದು ಹಂಗಿಗರಾದರೊಡೆಯಂಗೆ ೨೧

ಗನ್ನದಲಿ ಗುರು ಜಾರಿದನು ಕೃಪ
ಮುನ್ನವೇ ಹಿಂಗಿದನು ಕರ್ಣನ
ನಿನ್ನು ಕಂಡವರಾರು ಮೂರ್ಛೆಗೆ ಮೂರು ಬಾರಿಯದು
ಬೆನ್ನ ತೆತ್ತರು ಬಿರುದರಾತಗೆ
ಕೆನ್ನೆಯೆಡೆಗುಗಿದಂಬು ಸಹಿತವೆ
ನಿನ್ನ ಮಗನರನೆಲೆಗೆ ಸರಿದನು ಭೂಪ ಕೇಳೆಂದ ೨೨

ಕೊಂಡು ಬರುತಿದೆ ಭಟರು ಮನ್ನೆಯ
ಗಂಡನಾಗ್ಗೆ ಜೀಯ ಎನೆ ಖತಿ
ಗೊಂಡು ಕುರುಪತಿ ನೋಡಿದನು ಮೂಗಿನಲಿ ಬೆರಳಿಟ್ಟು
ಭಂಡರೆಂಬೆವೆ ಜಗದ ಗುರುಗಳು
ಗಂಡುಗಲಿಗಳು ವೈರಿ ಭಟರಿಗೆ
ಹೆಂಡಿರಾಗಲು ಹೋಗಿರೈ ದಿಟ ಹೋಗಿ ನೀವೆಂದ ೨೩

ಕಾಲ ವಹಿಲವ ಕಲಿಸಲೋಸುಗ
ಕೋಲಗುರು ಜಾರಿದನು ಶಲ್ಯನ
ಮೇಲು ಮುಸುಕನುವಾಯ್ತು ಬಿರುದೇನಾಯ್ತು ಗುರುಸುತನ
ಆಳುವಾಸಿಯ ಕಡುಹು ಕರ್ಣನ
ಬೀಳುಕೊಂಡುದು ಪೂತು ಮಝರೇ
ಬಾಲ ಎಂದವನೀಶ ಮೂದಲಿಸಿದನು ತನ್ನವರ ೨೪

ಇದಿರೊಳೀಶನ ಭಾಳ ನಯನದ
ಕದಹು ತೆಗೆದಿದೆ ಹಿಂದೆ ಮರಳುವ
ಡಿದೆ ಕೃತಾಂತನ ಕೊಂತವರಸನ ಮೂದಲೆಯ ವಚನ
ಅದಟು ಕೊಳ್ಳದು ಧಾಜಸೇವೆಯ
ಪದವಿ ಪಾತಕ ಫಲವೆನುತ ನೂ
ಕಿದರು ರಥವನು ಹಳಿವು ದರ್ಪದ ಹೇವ ಮಾರಿಗಳು ೨೫

ರಸದ ಬಂಧದ ಬಿಗುಹು ಮಚ್ಚಿಯ
ಮುಸುಕನುಗಿದುಳಿವುದೆ ಕುಮಾರನ
ಮುಸುಡ ಮುಂದಕೆ ಬಿದ್ದು ಬದುಕುವರೇ ಮಹಾದೇವ
ಎಸುತ ಹೊಗುವರು ಭಟನ ಘಾಯಕೆ
ಮುಸುಡ ತಿರುಹುವರಡಿಗಡಿಗೆ ಸಾ
ಹಸದ ಸುಂಕಿಗನೊಡನೆ ತಲೆಯೊತ್ತಿದರು ಷಡುರಥರು ೨೬

ಹರಿದು ಬಿದ್ದವು ಜೋಡು ಮೆಯ್ಯಲಿ
ಮುರಿದವಗಣಿತ ಬಾಣದೇರಿನೊ
ಳೊರೆದ ರಕುತದ ಧಾರೆ ನಾದಿತು ರಥದ ಹಲಗೆಗಳ
ಅರಿವು ಮರೆದಪಕೀರ್ತಿನಾರಿಯ
ಸೆರಗ ಹಿಡಿದರು ಹೇಳಲೇನದ
ನರಿಯೆನೇಕಾಂತದಲಿ ಕರ್ಣನ ಕರೆದನಾ ದ್ರೋಣ ೨೭

ಇದಿರೊಳಾನುವುದರಿದು ಹಸುಳೆಯ
ಕದನ ಹಂಗಿಗರಾದೆವಾಳ್ಗನ
ವದನಕಮಲಕೆ ನಮ್ಮ ಪೌರುಷವಿಂದು ಹಿಮವಾಯ್ತು
ಇದಿರೊಳಾನಿಹೆ ಶಲ್ಯನೆಡವಂ
ಕದಲಿ ಬಲದಲಿ ಕೃಪನಪರಭಾ
ಗದಲಿ ನೀ ಬಂದೆಸು ಕುಮಾರನ ಕರದ ಕಾರ್ಮುಕವ ೨೮

ಚಾಪವೀತನ ಕೈಯಲಿರಲಿ
ನ್ನಾ ಪಿನಾಕಿಗೆ ಗೆಲವು ಘಟಿಸದು
ವೈಪರೀತ್ಯಕೆ ಬೆದರಲಾಗದು ಸ್ವಾಮಿಕಾರ್ಯವಿದು
ರೂಪುದೋರದೆ ಬಂದು ಸುಭಟನ
ಚಾಪವನು ಖಂಡಿಸುವುದಿದು ಕುರು
ಭೂಪನುಳಿವೆಂದಿನಸುತನನೊಡಬಡಿಸಿದನು ದ್ರೋಣ ೨೯

ಹಿಂದಣೆಗೆ ತಿರುಗಿದನು ಭಾಸ್ಕರ
ನಂದನನು ಬಲವಂಕದಲಿ ಗುರು
ನಂದನನು ಕೃಪ ಶಲ್ಯ ವಾಮದೊಳಿದಿರಲಾ ದ್ರೋಣ
ನಿಂದು ಕದನವ ಕೆಣಕಿದರು ರಿಪು
ಬಂದಿಕಾರನೊಳೇರ ಸೂರೆಗೆ
ಬಂದು ಬಸಿವುತ ಹೋದರನಿಬರು ಬೈದು ರವಿಸುತನ ೩೦

ದಳವು ದಳವುಳವಾಯ್ತು ಕೇಸರ
ದೊಳಗೆ ವಿಸಟಂಬರಿದು ಕರ್ಣಿಕೆ
ಯೊಳಗೆ ರಿಂಗಣಗುಣಿದು ಸಂಗರ ಜಯದ ಮಡುವಿನಲಿ
ಸಲೆ ಸೊಗಸಿ ತನಿ ಸೊಕ್ಕಿ ದೆಸೆ ಪಟ
ದುಳಿದು ಸೌಭದ್ರೇಯ ಭೃಂಗನ
ಬಿಲು ದನಿಯ ಭರವಂಜಿಸಿತು ಜಯಯುವತಿ ವಿರಹಿಗಳ ೩೧

ಆರಯಿದು ಮಗನೆನಿಸುವೀ ಮಮ
ಕಾರವೆಮ್ಮೊಳು ಮೊಳೆತಡಾ ದಾ
ತಾರನುಳಿವೆನ್ನಿಂದ ತಪ್ಪುವುದೆನುತ ಮನದೊಳಗೆ
ಕೂರಲಗನಾ ಕರ್ಣ ಬರಸೆಳೆ
ದಾರಿ ಹಿಂದಣಿನೆಚ್ಚು ಪಾರ್ಥ ಕು
ಮಾರಕನ ಚಾಪವನು ಮುಕ್ಕಡಿಯಾಗಿ ಖಂಡಿಸಿದ ೩೨

ಉರುವ ಜಯವಧುವೊಕ್ಕತನದಲಿ
ಮುರಿದ ಕಡ್ಡಿಯಿದೆನಲು ಕರದಿಂ
ಮುರಿದು ಬಿದ್ದುದು ಚಾಪವಿಂದ್ರ ಕುಮಾರ ನಂದನನ
ಬೆರಗಡರಿ ಮುಖದಿರುಹಿ ಹಿಂದಣೆ
ನಿರಿದ ಕರ್ಣನ ನೋಡಿ ಮುಖದಲಿ
ಕಿರುನಗೆಯ ಕೇವಣಿಸಿ ನುಡಿದನು ಬೆರಳನೊಲೆದೊಲೆದು ೩೩

ಆವ ಶರಸಂಧಾನ ಲಾಘವ
ದಾವ ಪರಿ ಮಝು ಪೂತು ಪಾಯಿಕು
ದೇವ ಬಿಲ್ಲಾಳೆಂತು ಕಡಿದೈ ಕರ್ಣ ನೀ ಧನುವ
ಈ ವಿವೇಕವಿದಾರ ಸೇರುವೆ
ಯಾವಗಹುದಿದು ಹಿಂದೆ ಬಂದೆಸು
ವೀ ವಿಗಡತನ ನಿನಗೆ ಮೆರೆವುದು ಕರ್ಣ ಕೇಳೆಂದ ೩೪

ಎನಲು ಲಜ್ಜಿತನಾಗಿ ತಿರುಗಿದ
ನನುವರದಲೀ ಕರ್ಣನಾತನ
ಧನು ಮುರಿಯೆ ಕೈಕೊಂಡರೀ ದ್ರೋಣಾದಿ ನಾಯಕರು
ಕನಕ ರಥವನು ದ್ರೋಣನಾ ಗುರು
ತನುಜ ಸಾರಥಿಯನು ಕೃಪಾಚಾ
ರ್ಯನು ತುರಗವನು ಶಲ್ಯ ಕಡಿದನು ಭಟನ ಠೆಕ್ಕೆಯವ ೩೫

ತುಡುಕುವರೆ ಧನುವಿಲ್ಲ ಮುಂದಡಿ
ಯಿಡಲು ಸಾರಥಿಯಿಲ್ಲ ರಥ ಕಡಿ
ವಡೆದುದಿನ್ನೆಂತೊದಗುವನೊ ಸುಕುಮಾರ ತಾನೆನುತ
ಪಡೆ ಬಿಡದೆ ಬೊಬ್ಬಿರಿಯೆ ಬೆದರದೆ
ಕಡುಗಿ ಖಡ್ಗವ ಕೊಂಡು ರಿಪುಗಳ
ಕಡಿದು ಹರಹುತ ಬೀದಿವರಿದನು ಕಣನ ಮಧ್ಯದಲಿ ೩೬

ಈತನಿರೆ ಕಲ್ಪಾಂತ ರುದ್ರನ
ಮಾತು ಜಗಕೇಕೆನಲು ವೈರಿ
ವ್ರಾತವನು ಮುಂಕೊಂಡು ಹೊಯ್ದನು ಹೊಳೆವ ಖಡುಗದಲಿ
ಸೋತನೇ ಶಿಶು ಷಡುರಥರ ಕರೆ
ಈತನಾರೈ ಹೇಳಿ ಭಯವಿ
ನ್ನೇತಕೆಂದವನೀಶ ಮೂದಲಿಸಿದನು ತನ್ನವರ ೩೭

ಗೆಲಿದರಭಿಮನ್ಯುವನು ತನ್ನವ
ರೆಲವೊ ತಾ ವೀಳೆಯವನೆನುತವೆ
ಮೆಲುನಗೆಯಲತಿರಥರ ಜರೆದನು ಕೌರವರ ರಾಯ
ಬಳಿಕ ಎಡಬಲವಂಕದಲಿ ಮಂ
ಡಲಿಸಿ ಮೋಹರಿಸಿತ್ತು ರಿಪುಬಲ
ಜಲಧಿ ವಡಬನೊಳಾಂತು ತಾಗಿದರಂದು ಷಡುರಥರು ೩೮

ತುಡುಕಿದವು ತೇಜಿಗಳು ವಾಘೆಯು
ಗಡಣದಲಿ ತೂಳಿದವು ದಂತಿಗ
ಳೆಡಬಲದ ಬವರಿಯಲಿ ಮುತ್ತಿತು ಮತ್ತೆ ರಿಪುನಿಕರ
ಕಡುಮನದ ಕಾಲಾಳು ಕರೆದುದು
ಖಡುಗ ಧಾರೆಯನೀತನಳವಿಯ
ಕೆಡಿಸಿ ತಲೆಯೊತ್ತಿದರು ಭೂಪನ ಮೊನೆಯ ನಾಯಕರು ೩೯

ವಿಷದ ಹುಟ್ಟಿಯೊಳೆರಗಿ ನೊಣ ಜೀ
ವಿಸುವುದೇ ಶಿವ ಶಿವ ಕುಮಾರನ
ಮುಸುಡ ಮುಂದಕೆ ಬಿದ್ದು ಬದುಕುವುದುಂಟೆ ಭಟನಿಕರ
ಕುಸುರಿದರಿದನು ಕರಿಘಟೆಯ ನಿ
ಪ್ಪಸರದಲಿ ಕಾಲಾಳು ಕುದುರೆಗ
ಳಸುವ ಸೂರೆಯ ಬಿಟ್ಟನಂತಕ ದೂತ ಸಂತತಿಗೆ ೪೦

ಅರಿಭಟರ ಬೊಬ್ಬೆಗಳ ವೊಳಗಿನೊ
ಳರುಣಜಲ ವರುಷದಲಿ ರಿಪುಗಳ
ಕೊರಳ ಬನದಲಿ ಕುಣಿದುವೀತನ ಖಡ್ಗವನಕೇಕಿ
ಸುರಿವ ಖಂಡದ ರಕುತ ಧಾರೆಗೆ
ತರತರದಿ ಬಾಯ್ದೆಗೆದು ಶಾಕಿನಿ
ಯರ ಸಮೂಹವು ಬಳಿಯಲೈದಿತು ಪಾರ್ಥನಂದನನ ೪೧

ಕರುಳ ಹೂಗೊಂಚಲಿನ ಮೂಳೆಯ
ಬಿರಿಮುಗುಳ ನವ ಖಂಡದಿಂಡೆಯ
ಕರತಳದ ತಳಿರೆಲೆಯ ಕಡಿದೋಳುಗಳ ಕೊಂಬುಗಳ
ಬೆರಳ ಕಳಿಕೆಯ ತಲೆಯ ಫಲ ಬಂ
ಧುರದ ಘೂಕಧ್ವಾಂಕ್ಷ ನವ ಮಧು
ಕರದ ರಣವನವೆಸೆದುದೀತನ ಖಡ್ಗ ಚೈತ್ರದಲಿ ೪೨

ವೈರಿ ವೀರಪ್ರತತಿಗಮರೀ
ನಾರಿಯರಿಗೆ ವಿವಾಹವನು ವಿ
ಸ್ತಾರಿಸುವ ಸಮಯದೊಳಗಾಂತ ಸಿತಾಕ್ಷತಾವಳಿಯ
ತಾರಕಿಗಳೆಸೆದಭ್ರವೆನೆ ರಿಪು
ವಾರಣದ ಮಸ್ತಕದ ಮುತ್ತುಗ
ಳೋರಣಿಸಲೊಪ್ಪಿದುದು ಖಡ್ಗ ಸುರೇಂದ್ರಸುತ ಸುತನ ೪೩

ಶಾಕಿನಿಯರೋಕುಳಿಯ ಧಾರೆಯ
ಜೀಕೊಳವೆಯೋ ಜವನ ಜಳ ಜಂ
ತ್ರಾಕರುಷಣವೊ ರಕುತ ಲತೆಗಳ ಕುಡಿಯ ಕೊನರುಗಳೊ
ನೂಕಿ ಕೊಯ್ದೊರಳುಗಳ ಮುಂಡದ
ಮೂಕಿನಲಿ ನೆಗೆದೊಗುವ ನೆತ್ತರು
ನಾಕವನು ನಾದಿದುದೆನಲು ಸವರಿದನು ಪರಬಲವ ೪೪

ಅಟ್ಟಿ ಹೊಯ್ದನು ದಂತಿಗಳ ಹುಡಿ
ಗುಟ್ಟಿದನು ವಾಜಿಗಳ ತೇರಿನ
ಥಟ್ಟುಗಳ ಸೀಳಿದನು ಮಿಗೆ ಕಾಲಾಳನಸಿಯರೆದ
ಕೆಟ್ಟು ಬಿಟ್ಟೋಡಿದುದು ಭಟನರೆ
ಯಟ್ಟಿದನು ರಣದೊಳಗೆ ರಾಯ ಘ
ರಟ್ಟ ಪಾರ್ಥನ ತನಯ ಕೊಂದನು ಖಡ್ಗ ಮನದಣಿಯೆ ೪೫

ಸೀಳಿದನು ಸೌಬಲನೊಳಿಪ್ಪ
ತ್ತೇಳನಾ ಮಾದ್ರೇಶರೊಳು ಹದಿ
ನೇಳನಗ್ಗದ ರವಿಸುತನ ಮಂತ್ರಿಗಳೊಳೈವರನು
ಮೇಲೆ ಕೇರಳರೊಳಗೆ ಹತ್ತು ನೃ
ಪಾಲರನು ಕೌಸಲ ಯವನ ನೇ
ಪಾಳ ಬರ್ಬರರೊಳಗೆ ಕೊಂದನು ಹತ್ತು ಸಾವಿರವ ೪೬

ಹಸುಳೆಯೆನಬಹುದೇ ಮಹಾದೇ
ವಸಮ ಬಲ ಬಾಲಕನೆನುತ ಚಾ
ಳಿಸಿತು ಪಡೆಯಲ್ಲಲ್ಲಿ ತಲ್ಲಣಿಸಿದರು ನಾಯಕರು
ಮುಸುಡ ತಿರುಹುತ ಮಕುಟ ವರ್ಧನ
ರುಸುರಲಮ್ಮದೆ ಸಿಕ್ಕಿ ಭೂಪನ
ನುಸುಳುಗಂಡಿಯ ನೋಡುತಿರ್ದರು ಕೂಡೆ ತಮತಮಗೆ ೪೭

ತುಡುಕಲಮ್ಮುವರಿಲ್ಲ ಬಲದಲಿ
ಮಿಡುಕಲಮ್ಮುವರಿಲ್ಲ ರಕುತದ
ಕಡಲೊಳಗೆ ಬೆಂಡೆದ್ದು ನೆಗೆದುದು ಕೋಟಿ ಪಾಯದಳ
ಸಿಡಿಲು ಜಂಗಮವಾಯ್ತೊ ಪ್ರಳಯದ
ಮೃಡನು ಬಾಲಕನಾದನೋ ಕೊಲೆ
ಗಡಿಕನಹುದೋ ಕಂದ ಎಂದನು ಕೌರವರ ರಾಯ ೪೮

ಧನು ಮುರಿದ ಬಳಿಕಿಮ್ಮಡಿಸಿತೀ
ತನ ಪರಾಕ್ರಮವೆನುತ ಸೇನಾ
ವನಧಿ ಜರೆದುದು ಭಟರು ಹರಿದರು ಬಿಟ್ಟ ಮಂಡೆಯಲಿ
ಜನಪತಿಯ ಕಟ್ಟಳವಿಯಲಿ ರವಿ
ತನುಜನಡ್ಡೈಸಿದನು ಫಡ ಹೋ
ಗೆನುತ ನಾರಾಚದಲಿ ಮುಸುಕಿದನರ್ಜುನಾತ್ಮಜನ ೪೯

ಎಳೆಯ ರವಿ ರಶ್ಮಿಗಳು ರಕ್ತೋ
ತ್ಪಲದೊಳಗೆ ಹೊಳೆವಂತೆ ಹೊನ್ನರೆ
ಬಳಿದ ಹಿಳುಕನೆ ಕಾಣಲಾದುದು ಭಟನ ಕಾಯದಲಿ
ಒಲೆದು ಕೇಸರಿ ಹೊಯ್ವವೋಲ
ವ್ವಳಿಸಿ ಕರ್ಣನ ಹಯ ರಥವನ
ಪ್ಪಳಿಸಿ ಮರಳುವ ಲಾಗಿನಲಿ ಖಂಡೆಯವ ಖಂಡಿಸಿದ ೫೦

ಕರದ ಕರವಾಳುಡಿಯೆ ಬಿಡೆ ಹ
ಲ್ಮೊರೆದು ಭರದಲಿ ಗದೆಯ ಕೊಂಡ
ಬ್ಬರಿಸಿ ಕೋಪದಲಗಿದು ಹರಿಗೆಯ ಹಿಡಿದು ಮುಂದಣಿಗೆ
ಅರರೆ ಸಮ್ಮುಖವಾಗೆನುತ ಸಂ
ಗರದೊಳುರವಣಿಸಿದನು ಕರ್ಣನ
ತೆರಳಿಚಿದನೈನೂರು ಹಜ್ಜೆಯಲಿಂದ್ರಸುತ ಸೂನು ೫೧

ಗದೆಯ ಹೊಯ್ಲಲಿ ನೊಂದು ಕೋಪದೊ
ಳದಿರೆನುತ ಸೈಗೆಡೆದ ರೋಮದ
ಹೊದರುಗಳ ಬಿಡುಗಣ್ಣ ಕೆಂಪಿನ ಕುಣಿವ ಮೀಸೆಗಳ
ಕುದಿದ ಹೃದಯದ ಕಾದ ದೇಹದ
ಕದನಗಲಿ ರವಿಸೂನು ಮೇಲಿ
ಕ್ಕಿದನು ಫಡ ಹೋಗದಿರು ಹೋಗದಿರೆನುತ ತೆಗೆದೆಚ್ಚ ೫೨

ಶರಮಯವು ಸರ್ವಾಂಗವಿನ್ನೀ
ಸರಳು ನೆಡಲಿಂಬಿಲ್ಲ ಮೈಗಳೊ
ಳರಿಯನದನಭಿಮನ್ಯು ಕರ್ಣನ ಮೇಲುವಾಯಿದನು
ತರಹರಿಸಿ ಕೆಲಸಿಡಿದು ರಿಪು ಭಟ
ನುರವನುದರವನೆಡಬಲನ ಕಿ
ಬ್ಬರಿಯನೆಚ್ಚನು ಕರ್ಣ ನೂರೈವತ್ತು ಬಾಣದಲಿ ೫೩

ಸರಳು ನೆಡಲುಬ್ಬೆದ್ದು ಬೊಬ್ಬಿರಿ
ದುರವಣಿಸಿ ಬರೆ ದಿವ್ಯಶರದಲಿ
ಕರವೆರಡ ಹರಿಯೆಚ್ಚಡಾಗಳೆ ಕೆಡೆದವವನಿಯಲಿ
ಇರದೆ ಗಹಗಹಿಸಿದನು ಕೇಳೆಲೆ
ಮರುಳೆ ಸೂತಜ ಕೈಮುರಿಯೆ ಸಂ
ಗರದ ಸಿರಿ ಹಿಂಗುವಳೆ ತನ್ನನೆನುತ್ತ ಗರ್ಜಿಸಿದ ೫೪

ಸುರಿವ ರಕುತದ ಸರಿಯು ಸೆರಗಿನೊ
ಳೊರಸಿ ರಥದಚ್ಚುಗಳನೊದೆದನು
ತಿರುಹಿ ಗಾಲಿಯ ತೆಗೆದು ಮುಂಗೈಗೊಂಡು ನಡೆನಡೆದು
ಅರಿಬಲವನಿಡೆ ಮುಗ್ಗಿ ಕೆಡೆದುದು
ತುರಗವಜಿಗಿಜಿಯಾದುದಿಭ ತತಿ
ಯುರುಳಿದವು ಹೊರಳಿದವು ಹೂಣಿಗರಟ್ಟೆ ಸಮರದಲಿ ೫೫

ಹರಿಯ ಚಕ್ರದ ಸತ್ವವೀತನ
ಧುರದೊಳಾಯ್ತೆನೆ ರಥದ ಚಕ್ರದೊ
ಳರಿಬಲವನಿಡೆ ಮುಗ್ಗಿ ಕೆಡೆದುದು ಬಹಳ ತಳತಂತ್ರ
ಬಿರುದರಾನುವರಿಲ್ಲ ಷಡುರಥ
ರುರವಣೆಯು ಹಿಂದಾಯ್ತು ರಾಯರ
ಗುರುವ ಕಂಡವರಿಲ್ಲೆನುತ ಕುರುರಾಯ ಚಿಂತಿಸಿದ ೫೬

ಮನದ ಖತಿ ಹೊಗರೇರೆ ದುಶ್ಶಾ
ಸನನ ಮಗನಿದಿರಾಗಿ ಖಡುಗದ
ಮೊನೆಯ ಚೂರಿಸಿ ದಂಡವಲಗೆಯ ತೊಡೆಯೊಳೊದರಿಸುತ
ತನಗೆ ಮೃತ್ಯುವ ಕರೆವವೋಲ
ರ್ಜನ ಕುಮಾರನ ಕರೆದು ಹಳಚಿದ
ನನಿಮಿಷಾವಳಿ ಪೂತು ಪಾಯ್ಕೆನೆ ಹೆಣಗಿದರು ಭಟರು ೫೭

ಗಾಲಿ ತೀರಿದವೆಂದು ಬಂದನೆ
ಕಾಳಗಕೆ ತಪ್ಪೇನೆನುತ ಕರ
ವಾಳಿನಾತನ ಬಗೆಯದೊಳಹೊಕ್ಕೆರಗಿದನು ಶಿರವ
ಮೇಲುವಲಗೆಯುಲಣೆದು ಹಾಯ್ದನು
ಬಾಲಕನ ಘಾಯವನು ನಸು ನಗು
ತೇಳಿಸುತ ದಂಡೆಯಲಿ ಕಳೆದನು ತಿವಿದನವನುರವ ೫೮

ಕರಹತಿಗೆ ಧಡಧಡಿಸಿ ತಿರ್ರನೆ
ತಿರುಗಿ ಬೀಳುತ ಧೈರ್ಯದಲಿ ಹೊಡ
ಕರಿಸಿ ಹೊರಬಿನೊಳೆದ್ದು ಹೊಯ್ದನು ಪಾರ್ಥನಂದನನ
ಅರಿ ಕೃಪಾಣದ ಘಾಯವನು ತರ
ಹರಿಸಲರಿಯದೆ ಬೀಳುತಹಿತನ
ನೆರಗಿದನು ಬಳಿಕವನಿಗೊರಗಿದರಾ ಕುಮಾರಕರು ೫೯

ಕಾಳುಕಿಚ್ಚೆದ್ದಡವಿಯನು ಕುಡಿ
ನಾಲಗೆಯೊಳಳವಡಿಸಿ ದಳ್ಳುರಿ
ಜ್ವಾಲೆ ತಗ್ಗಿದವೋಲು ಗಗನದ ಮುಂಗಿಲ ಮೋಹರವ
ದಾಳಿಯಲಿಯುರೆಯಟ್ಟಿ ಸುಂಟರು
ಗಾಳಿಯುರವಣೆ ನಿಂದವೊಲು ಸುರ
ಪಾಲ ತನಯನ ತನಯನಸ್ತಮಿಸಿದನು ರಣದೊಳಗೆ ೬೦

ತೋಳ ತಲೆಗಿಂಬಿನಲಿ ಕೈದುಗ
ಳೋಳಿಗಳ ಹಾಸಿನಲಿ ತನ್ನಯ
ಕಾಲ ದೆಸೆಯಲಿ ಕೆಡೆದ ಕೌರವ ಸುತರು ನೂರ್ವರಲಿ
ಬಾಲಕನು ಬಳಲಿದನು ಸಮರದ
ಲೀಲೆಯಲಿ ಕುಣಿಕುಣಿದು ಬಸವಳಿ
ದಾಳುಗಳ ದೇವನು ಮಹಾಹವದೊಳಗೆ ಪವಡಿಸಿದ ೬೧

ಬಿಗಿದ ಹುಬ್ಬಿನ ಬಿಟ್ಟ ಕಂಗಳ
ಹೊಗರು ಮೋರೆಯ ಹಿಣಿಲ ಮುಂಡೆಯ
ಜಗಿಯ ರಕುತದ ಜೋರಿನೊಡಲಿನ ತುರುಗಿದಂಬುಗಳ
ಹೆಗಲ ಕೊಯ್ಲಿನ ತಗ್ಗಿನಲಿ ಸೈ
ನೆಗೆದ ರೋಮದ ವಿಕ್ರಮಾಗ್ನಿಯ
ತಗಹು ಬಿಡದಭಿಮನ್ಯು ಮೆರೆದನು ಶಸ್ತ್ರ ಶಯನದಲಿ ೬೨

ಸಾವ ಹರಯವೆ ಎನುತ ಗಗನದ
ದೇವತತಿ ಮರುಗಿತ್ತು ಶಕ್ರನ
ಸಾವಿರಾಲಿಯೊಳೊರತೆ ಮಸಗಿತು ಪೌತ್ರ ಶೋಕದಲಿ
ತಾವು ಷಡುರಥರೊಬ್ಬ ಹಸುಳೆಯ
ಹೇವವಿಲ್ಲದೆ ಕೊಂದರೋ ಸುಡ
ಲಾವ ವೀರರು ಕೌರವಾದಿಗಳೆಂದುದಮರಗಣ ೬೩

ಮಂಗುವ ವೇಷವ ಧರಿಸಿ ದೂರದ
ಲಗಲಿ ಹೋಗಲು ತನ್ನ ಚಿತ್ತಕೆ
ಢಗೆಯ ಡಾವರವಾಯ್ತು ತನಗೊಳಗಾಯ್ತು ಪರಿತಾಪ
ಮಗನ ಮರಣದಲೆಂತು ಜೀವವ
ಬಗೆವಳಕಟ ಸುಭದ್ರೆಯೆನುತವೆ
ದೃಗುಜಲವ ಬೆರಳಿಂದ ಮಿಡಿದರು ಗೌರಿದೇವಿಯರು ೬೪

ಹಲವು ಗಜಗಳು ಸಿಂಹ ಶಿಶುವನು
ಗೆಲಿದ ಪರಿಯಂತಾಯ್ತು ಹಾವಿನ
ಬಳಗ ಗರುಡನ ಮರಿಯ ಮುರಿದವೊಲಾಯಿತಕಟೆನುತ
ಅಳಲಿದುದು ಸುರ ಕಟಕವವನಿಯೊ
ಳಿಳಿದರಪ್ಸರ ಗಣಿಕೆಯರು ಕೋ
ಮಳನ ತಂದರು ವಾಸವನ ಸಿಂಹಾಸನದ ಹೊರೆಗೆ ೬೫

ಧುರದ ಪ್ರಳಯ ಕೃತಾಂತನನು ಪರಿ
ಹರಿಸಿದೆವು ಮೃತ್ಯುವಿನ ಪಾಶದ
ಕೊರಳ ಬಳಚಿದೆವೆನುತ ಕೌರವ ಬಲದ ನಾಯಕರು
ಶಿರವ ತಡಹುತ ತಮ್ಮ ಶಿಬಿರಕೆ
ತಿರುಗಿದರು ಬಾಲಕನನೀಕ್ಷಿಸ
ಲರಿದು ತನಗೆಂಬಂತೆ ರವಿ ಜಾರಿದನು ಪಶ್ಚಿಮಕೆ ೬೬

ಸೋಲವರಿಗಳಿಗೆಂದು ಹರುಷವ
ತಾಳದಿರು ಧೃತರಾಷ್ಟ್ರ ಕೃಷ್ಣನ
ಸೋಲವದು ಪಾಂಡವರು ಸೋತವರಲ್ಲ ನಂಬುವುದು
ಸೋಲವಿದು ನಾಳಿನಲಿ ಪ್ರಳಯದ
ಕಾಲ ಕೌರವ ಕುಲಕೆ ದಿಟವಿದು
ಸೋಲವುಂಟೇ ವೀರ ನಾರಾಯಣನ ಭಕ್ತರಿಗೆ ೬೭

ಏಳನೆಯ ಸಂಧಿ

ಸೂ. ಅರಿ ಮಹೇಶ ಕುಠಾರ ವೀರನು
ವರ ಕಿರೀಟಕುಮಾರ ಧೀರನು
ಸುರರ ನಗರಿಗೆ ನಡೆಯೆ ಹಲುಬಿದನಂದು ಯಮಸೂನು

ತೆಗೆದುದರಿ ಪರಿವಾರ ಕಹಳಾ
ದಿಗಳ ಸನ್ನೆಯಲುಭಯ ಬಲ ಕಾ
ಳಿಗವನುಳಿದುದು ಬಂದು ಹೊಕ್ಕರು ತಮ್ಮ ಪಾಳೆಯವ
ಮಗನು ರಣದಲಿ ಮಡಿದ ಹದ ಬೀ
ಡುಗಳೊಳಾದುದು ವಾರ್ತೆ ದೂತರು
ದುಗುಡ ಭರದಲಿ ಬಂದು ಹೊಕ್ಕರು ರಾಜ ಮಂದಿರವ ೧

ಅವನಿಪತಿ ಖಂಡೆಯವ ನಕುಲನ
ಪವನಸುತನ ಕಠಾರಿಯನು ನೃಪ
ನಿವಹದಾಯುಧ ತತಿಯನೊಯ್ಯನೆ ತೆಗೆದು ಬೈಚಿಟ್ಟು
ಬವರದಲಿ ಸುತನಳಿದನೋ ಕೌ
ರವರ ಕೈವಶವಾದನೋ ಸಂ
ಭವಿಪ ಹದನೇನೆಂಬ ನೃಪತಿಯ ಕಂಡರೈತಂದು ೨

ಅವನಿಪಾಲ ಕುಮಾರ ಕಂಠೀ
ರವನು ರಣದಲಿ ಬೀದಿವರಿದು
ತ್ತ್ರಿವದಲಹಿತರನಿರಿದು ಕೌರವ ರಾಯ ನಂದನರ
ಜವನ ನಗರಿಗೆ ಕಳುಹಿ ತಾ ವಾ
ಸವನ ಸಿಂಹಾಸನವನಡರ್ವ
ತವಕದಲಿ ಜಾರಿದನೆನಲು ಶಿವ ಎನುತ ಬಸವಳಿದ ೩

ಕುಲಿಶ ಹತಿಯಲಿ ಕುಲ ಶಿಲೋಚ್ಚಯ
ವಿಳೆಗೆ ಕೆಡೆವಂದದಲಿ ನಿಜಸುತ
ನಳಿದ ವಾರ್ತಾ ವಚನದುಪಟಳಕವನಿಪಾಲಕನು
ಮಲಗಿದನು ಮೈಮರೆದು ಮಹಿ ಮಂ
ಡಳಿಕರೊಳು ಗುಜುಗುಜಿನೊಳಿರೆ ಕಳ
ವಳಿಕೆ ಮೊಳೆತುದು ಕಟಕದಲಿ ದುಮ್ಮಾನಮಯವಾಯ್ತು ೪

ಅರಮನೆಯ ಗಜಬಜದ ಹದನರಿ
ದರಸನಪಗತನೆಂದು ಪಾಳಯ
ದಿರುಳು ನಡುಗಿತು ತೊಡಗಿದವು ಕೈಸೂರೆ ಕೆಲಕಡೆಯ
ನೆರವಿ ಮಸಗಿತು ಕೆತ್ತುವಂಗಡಿ
ದುರುಳರಬ್ಬರಿಸಿದರು ಮುಸುಕಿನ
ಸುರಗಿ ಕೆತ್ತವು ಮಂದಿ ದಳವುಳವಾಯ್ತು ನಿಮಿಷದಲಿ ೫

ಹೊಳಲು ತಲೆಕೆಳಕಾಯ್ತು ಹುಯ್ಯಲು
ತಳಿತುದೊಳತೋಟಿಯಲಿ ಕೆತ್ತವು
ನಿಳಯ ನಿಳಯ ಕವಾಟವುದ್ರೇಕಿಗಳ ಮಯವಾಯ್ತು
ಎಲೆಲೆ ಕೆಟ್ಟುದು ಕಟಕವೆಂದು
ಮ್ಮಳಿಸಿದರು ಸಚಿವರು ಮಹೀಪತಿ
ಯಂಳಿವನರಿಯಲು ನಾಸಿಕದಲಾರೈದರುಸುರುಗಳ ೬

ಉರಿಯ ಚೂಣಿಯಲುಸುರು ಮೂಗಿನ
ರಲುರವಣಿಸುತಿದೆ ಧರಣಿಪತಿ ಸು
ಸ್ಥಿರನು ಹೊಯ್ ಹೊಯ್ ಹೊಳಲ ಬೆದರಿಸಿ ಬಣಗುಗಳ
ಹರಿಯೆನಲು ಹೊರವಂಟು ಹೊಯ್ದರು [ಸುಲಿವ
ತುರಗ ಗಜಘಟೆ ಬೀದಿವರಿದವು
ನೆರವಿದೊಳಸಿನ ಮನ್ನೆಯರ ಸೆಣಸಿದರು ಶೂಲದಲಿ ೭

ಹೊಳಲ ಗಜಬಜವಡಗಿತರಮನೆ
ಯೊಳಗೆ ಪಸರಿಸಿತತುಳ ಶೋಕದ
ಜಲಧಿ ಭೂಪಾಲಕನ ಸೈರಣೆಗಾಯ್ತು ಮಹನವಮಿ
ಒಳಗುರಿವ ಹಸಿಮರದ ತುದಿಯಲಿ
ಜಲವೊಗುವವೊಲು ಹೃದಯ ಶಿಖಿಯುರೆ
ತಳಿತು ಲೋಚನವಾರಿ ತುಳುಕಿತು ಪವನಜಾದಿಗಳ ೮

ಮರೆವುತೆಚ್ಚರುತವನಿಪತಿ ಕರೆ
ತರುಣನಾವೆಡೆ ರಾಯಗಜ ಕೇ
ಸರಿಯದಾವೆಡೆ ಕಂದ ಬಾಯೆನುತಪ್ಪಿದನು ಬಯಲ
ಹೊರಳಿದನು ಹುಡಿಯೊಳಗೆ ಸಲೆ ಕಾ
ತರಿಸಿದನು ಮೋಹಾಂಧಕಾರಕೆ
ಕರಣವನು ಕೈಸೂರೆಗೊಟ್ಟನು ನಿಜದೊಳೆಚ್ಚರದೆ ೯

ಬಂದು ಫಲುಗುಣನೆನ್ನ ಮೋಹದ
ಕಂದನಾವೆಡೆಯೆಂದಡಾನೇ
ನೆಂದು ಮಾರುತ್ತರವ ಕೊಡುವೆನು ವೈರಿ ನಾಯಕರು
ಕೊಂದರೆಂಬೆನೊ ಮೇಣು ನಾನೇ
ಕೊಂದೆನೆಂಬೆನೊ ಶಿವ ಮಹಾ ದೇ
ವೆಂದು ಪುತ್ರಸ್ನೇಹ ಸೌರಂಭದಲಿ ಹಲುಬಿದನು ೧೦

ಅರಮನೆಯ ಗಜಬಜವ ಕೇಳಿದು
ದೊರೆಯೊಳಾವವನಳಿದನಕಟೆಂ
ದರಸಿಯರು ಬೆಸಗೊಳಲು ದ್ರೌಪದಿಗರುಹಿದರು ಹದನ
ಉರಿವ ಡಾವರವೆಳೆಯ ಬಾಳೆಯ
ಬೆರಸುವಂತಿರೆ ರಾಯ ಕುವರನ
ಮರಣ ವಾರ್ತೆಯನಾ ಸುಭದ್ರಾ ದೇವಿ ಕೇಳಿದಳು ೧೧

ತೆಳುವಸುರ ಬಿರುವೊಯ್ಲ ಮುರಚಿದ
ಬಳಲ ಮುಡಿಯುರಳುಗಳ ಮುತ್ತಿಗೆ
ಯಳಿ ರವದ ಭಾರಣೆಯ ಹಾಹಾರವದ ಕಾಯದಲಿ
ಲಲನೆ ಬರೆ ಚೆಲುವಾಯ್ತು ಧರ್ಮಜ
ನಳಲು ಮಿಗೆ ಕೊಂಡಿರಲು ನಾಟ್ಯದ
ಕಳನ ಗೆಲದಿರಳೆನಲು ಬಂದಳು ದ್ರೌಪದಾದೇವಿ ೧೨

ಅಳಲ ಶಿಖಿಯಲಿ ಬಾಡಿದಾನನ
ಜಲರುಹದ ಕಡುವೇದನೆಯು ಕಳ
ಕಳದ ಹಾಹಾ ರವದ ರೌದ್ರೆ ಸುಭದ್ರೆ ನಡೆತಂದು
ನೆಲಕೆ ಧೊಪ್ಪನೆ ಕೆಡೆದು ಸಭೆಯಲಿ
ಹಲುಬಿದಳು ಕೊಳುಗುಳಕೆ ಕಂದನ
ಕಳುಹಿದವರಿಗೆ ಸಂದುದೇ ಪರಿಣಾಮವೆಂದೆನುತ ೧೩

ಎಲೆ ಯುಧಿಷ್ಠಿರದೇವ ಸಾಲದೆ
ಕೆಲನ ಮೆಚ್ಚಿಸುವಳಲು ಲೋಚನ
ಜಲವ ತೊಡೆಯ್ಯೆ ಭೀಮ ಬಲ್ಲೆನು ನಿಮ್ಮ ನೆನಹುಗಳ
ಅಳಲದಿರಿ ಸಹದೇವ ನಕುಳರು
ನಿಲಿಸಿರೈ ನಿಮ್ಮಿಷ್ಟ ಸಿದ್ಧಿಯ
ಬೆಳಸು ಫಲವಾಯ್ತೇಕೆ ನೋವಿನ್ನೆಂದಳಿಂದುಮುಖಿ ೧೪

ಮಗನು ಪಂಚದ್ರೌಪದೇಯರ
ಬಗೆಯುನೆನ್ನವನಿರಲು ರಾಜ್ಯವ
ಹೊಗಿಸಲನುವಿಲ್ಲೆಂದು ಕಂದನ ರಣಕೆ ನೂಕಿದಿರಿ
ಬಗೆಯೊಲವು ಫಲವಾಯ್ತಲಾ ಕಾ
ಳೆಗವ ಗೆಲಿದ್ಯೆವರು ಕುಮಾರರು
ಹೊಗಿಸಿರೈ ಗಜಪುರವನೆಂದು ಸುಭದ್ರೆ ಹಲುಬಿದಳು ೧೫

ಅಕಟ ಮಗನೇ ಬಹಳ ಪಾಪಾ
ತ್ಮಕರ ಬಸುರಲಿ ಬಹುದರಿಂದೀ
ನಕುಳನುದರದಲಾಗಲೀ ಧರ್ಮಜನ ಜಠರದಲಿ
ಸುಕೃತಿ ನೀನುದಯಿಸಲು ಬಹು ಕಂ
ಟಕರು ಬಳಿಕಾರುಂಟು ಕಡು ಪಾ
ತಕಿಯಲಾ ನಿಮ್ಮಯ್ಯನೆಂದಳು ಫಲುಗುಣನ ರಾಣಿ ೧೬

ಧುರವ ಹೊಗಿಸಕ್ಕವನೆ ಚಿಕ್ಕವ
ನಿರಿಯಲಾಪನೆ ಬಹನೆ ಮರಳಿದು
ಧರೆಯ ವೈಭವಕಳುಪಿ ಕಳುಹಿದಿರೆನ್ನ ಕಂದನನು
ವರ ಯುಧಿಷ್ಠಿರ ಜನಪ ಲೋಕದ
ಕರುಣೆಯೆಂಬರು ಕುನ್ನಿಗಳು ಮರೆ
ಗೊರಳುಗೊಯ್ಕನನರಿಯರೆಂದಳು ಫಲುಗುಣನ ರಾಣಿ ೧೭

ಶೋಕವಿಮ್ಮಡಿಸಿತ್ತು ಚಿತ್ತ
ವ್ಯಾಕುಳತೆಯಾ ಸತಿಯ ನುಡಿಗಳ
ನೇಕ ಸಾಣೆಯ ಸರಳು ಮುರಿದವು ನೃಪನ ಹೃದಯದಲಿ
ಆ ಕುಮಾರ ವಿಯೋಗವಹ್ನಿಗೆ
ಯಾಕೆಯಳಲು ಸಮೀರನಾಯ್ತು ದಿ
ವೌಸಕರ ಸಮ್ಮೇಳವೇ ಪುರುಷಾರ್ಥ ತನಗೆಂದ ೧೮

ಎಲೆ ವೃಕೋದರ ನಕುಳ ಸಾತ್ಯಕಿ
ನಿಲಿಸಿರೈ ತಂಗಿಯನು ತನ್ನಯ
ಕೊಲೆಗೆ ಮಗನಳಿವೊಂದು ಸಾಲದೆ ತನ್ನ ನುಡಿಯೇಕೆ
ನಳಿನನಾಭನ ಕರುಣದೊರತೆಯು
ಕಳಿದರಾರೇಗುವರು ಶಿವ ಶಿವ
ನೆಲನೊಳೆನ್ನವೊಲಾರು ಪಾಪಿಗಳೆಂದು ಬಿಸುಸುಯ್ದ ೧೯

ಧರಣಿಪನ ಶೋಕಾತಿಶಯವನು
ವರ ಸಮಾಧಿಯೊಳರಿದು ಮುನಿಪತಿ
ಕರುಣದಲಿ ಕಡುನೊಂದು ಸಕಲ ಜಗಕ್ಕನುಗ್ರಹವ
ಕರುಣಿಸುವವೊಲು ಕರುಣಿತನವನು
ಮೆರೆಯಲೋಸುಗವಿರದೆ ಗಗನೇ
ಚರದ ಗತಿಯಲಿ ಬಂದನೈ ದ್ವೈಪಾಯನವ್ರತಿಪ ೨೦

ಬಂದು ವೇದವ್ಯಾಸಮುನಿ ನೃಪ
ಮಂದಿರವ ಹೊಗಲೆದ್ದು ಪದದಲಿ
ಸಂದಣಿಸಿ ಚಾಚಿದನು ಮಕುಟವನವನಿಪಾಲಕನು
ನೊಂದವರು ಸತ್ಸಂಗತಿಯಲಾ
ನಂದವಡೆವುದೆನುತ್ತ ಮುನಿಪತಿ
ಕಂದು ಮೋರೆಯ ಮಹಿಪತಿಯ ನೆಗಹಿದನು ಕರುಣದಲಿ ೨೧

ಎಲೆ ಯುಧಿಷ್ಠಿರ ನೃಪ ಕುಮಾರ
ಪ್ರಳಯದಾಪತ್ತಾಯ್ತೆ ಭೀಮನ
ನಲವಿಗೂಣೆಯವಾಯ್ತೆ ದುಸ್ಥಿತಿಯಾಯ್ತೆ ನಕುಲಂಗೆ
ಬಲುದುಗುಡ ಸಹದೇವನಲಿ ಸಂ
ಗಳಿಸಿತೇ ದ್ರೌಪದಿ ಸುಭದ್ರಾ
ಲಲನೆಯರಿಗನುಚಿತವು ಘಟಿಸಿತೆ ಎಂದನಾ ಮುನಿಪ ೨೨

ಅಡಸಿದಾಪತ್ತಿನಲಿ ಧೈರ್ಯವ
ಹಿಡಿವುದೇ ಸಂಪ್ರೌಢಿ ಸಾಕಿ
ನ್ನೊಡಲು ಕರಗಿದೊಡೇಳಲರಿವನೆ ಹಿಂಗಿದಭಿಮನ್ಯು
ಒಡನೆ ಬಂದವು ಬಿಡವು ಭವದಲಿ
ತೊಡಕಿ ಸುಕೃತವು ದುಷ್ಕೃತಂಗಳು
ಕಡೆಗೆ ತಿಳಿವಿನೊಳಲ್ಲದಿಹಪರ ಸೌಖ್ಯವಿಲ್ಲೆಂದ ೨೩

ಎಲ್ಲರೋಪಾದಿಯ ಕುಮಾರಕ
ನಲ್ಲ ಕಾಣಿರೆ ವೀರ ವಿತರಣ
ದಲ್ಲಿ ಛಲದಲಿ ಶೀಲದಲಿ ನಾನಾ ಗುಣಂಗಳಲಿ
ಇಲ್ಲ ಸುಕುಮಾರಂಗೆ ಸರಿ ಮಗ
ನಿಲ್ಲದೇಗುವೆನಕಟ ವಚನದ
ಸೆಲ್ಲಹದಲಿರಿಯದಿರೆನುತ ಹಲುಬಿದನು ಭೂಪಾಲ ೨೪

ಜನನವೇ ಲಯಬೀಜ ಮರಣವೆ
ಜನನ ಬೀಜವು ತೋರಿ ಕೆಡುವೀ
ತನುವಿನಭಿರಂಜನೆಯ ಸೌಖ್ಯಕೆ ಮಾರದಿರು ಮನವ
ಘನ ಪರಂಜ್ಯೋತಿ ಸ್ವರೂಪದ
ನೆನಹ ಮರೆದೀ ಮೋಹಮಯ ಬಂ
ಧನದೊಳಗೆ ಮರುಳಹರೆ ಮಗನೇ ನಿನ್ನನರಿಯೆಂದ ೨೫

ಹರನೊಡನೆ ಹೊಯ್ದಾಡಿದಗ್ಗದ
ನರನು ತಂದೆ ಸಮಸ್ತ ಭುವನೇ
ಶ್ವರನಲಾ ಮುರವೈರಿ ಮಾವನು ನಿನ್ನ ತನಯನಿಗೆ
ಧುರದೊಳೀ ಹದನಾಯ್ತು ಮಿಕ್ಕಿನ
ನೊರಜುಗಳ ಪಾಡೇನು ಕಾಲನು
ಹರಿ ಹರ ಬ್ರಹ್ಮಾದಿಗಳ ಕೈಕೊಂಬನಲ್ಲೆಂದ ೨೬

ದೇಹ ತಾನಭಿಮನ್ಯುವೋ ದಿಟ
ದೇಹಿ ತಾನಭಿಮನ್ಯುವೋ ಜಡ
ದೇಹ್ ತಾನಭಿಮನ್ಯುವಲ್ಲದು ಕೆಟ್ಟರೇನಾಯ್ತು
ದೇಹವೆಂಬುದನಿತ್ಯ ನಿನ್ನವ
ರಾಹವದೊಳಳಿದವರ ಬಿಡು ಸಂ
ದೇಹವನಹಮ್ಮಮತೆಗಳ ಬೀಳ್ಕೊಟ್ಟು ನೋಡೆಂದ ೨೭

ಎನ್ನದಾನೆಂಬೆರಡರಿಂದವೆ
ಬನ್ನಬಡುವನು ಜೀವನಲ್ಲದೆ
ಮುನ್ನವಿನ್ನೆಂದೆಂದಿಗಾತ್ಮಂಗಿಲ್ಲ ಭವಬಂಧ
ನಿನ್ನ ನೀನರಿ ಸಾಕು ಮಾಯೆಯ
ಗನ್ನಗತಕವ ಗೆಲುವೆ ಕನಸಿನ
ಪೊನ್ನ ಕಾಣದೆ ದುಃಖಪಡುವರೆ ಭೂಪ ಕೇಳೆಂದ ೨೮

ಉರಗ ನರ ದಿವಿಜಾದಿಗಳಿಗಿದು
ಪರಿಹರಿಸಲಳವಲ್ಲ ದೈವದ
ಪರುಠವಣೆ ಮುನ್ನಾದಿಯಲಿ ನಿರ್ಮಿಸಿತು ಮೃತ್ಯುವನು
ಅರಸನಾಗಲಿ ಧನಿಕನಾಗಲಿ
ಹಿರಿಯನಾಗಲಿ ಬಡವನಾಗಲಿ
ಮರಣ ಜನಿಸಿದ ಬಳಿಕ ತಪ್ಪದು ಮಗನೆ ಕೇಳೆಂದ ೨೯

ಇರುಳ ಹಗಲಿನ ಬೀಜ ನೆರವಿಯೆ
ಹರೆವುದಕೆ ಮೊದಲುನ್ನತೋನ್ನತ
ಮರುಳೆ ಕೇಡಿನ ಕಾಳಕೂಟವೆ ವೀರನಿರ್ವಹಣ
ಸಿರಿ ದರಿದ್ರತೆಗಡಹು ಜನನವೆ
ಮರಣ ಫಲವಿದನರಿದು ಬುಧರಾ
ಚರಿಸುವುದು ಕೇಳೆಂದು ವೇದವ್ಯಾಸ ಮುನಿ ನುಡಿದ ೩೦

ತಿಳಿದು ಧರ್ಮಜ ಕೇಳು ಕೃತಯುಗ
ದೊಳಗೆ ಕಂಪನನೆಂಬ ಭೂಪನು
ಕುಲತಿಲಕ ಹರಿಯೆಂಬ ಮಗನಾತಂಗೆ ಜನಿಸಿದನು
ಬಳಿಕ ಯೌವ್ವನನಾಗಿ ಪರ ಮಂ
ಡಲಕೆ ನಡೆದನು ವೈರಿ ರಾಯರ
ವಳಿತವನು ತಾನೊತ್ತಿಕೊಂಡನು ರಿಪುನ ಪರ ಕೆಡಹಿ ೩೧

ಮಗನೆ ಕಂಪನನೆಂಬ ಭೂಪನ
ಮಗನು ಮತ್ತೊಮ್ಮಿನಲಿ ಬಲುಗಾ
ಳಿಗವ ಕಾದಿ ವಿರೋಧಿ ಸೇನೆಯೊಳಾನೆವರಿವರಿದು
ಬಗೆಯೆ ನಿನ್ನಭಿಮನ್ಯುವಿನವೋ
ಲಗಣಿತರ ನಸಿಯರೆದು ಸುರಪನ
ನಗರಿಗೈದಿದನೆಂದು ಕಂಪನು ಕೇಳಿ ಬಸವಳಿದ ೩೨

ನಿನಗೆ ಬಂದಾಪತ್ತಿನಂತಿರ
ಲನಿತು ಬಂದುದು ಕಂಪನೆಂಬಾ
ತನನು ಸಂತೈಸಲ್ಕೆ ನಾರದನವನಿಗೈತಂದು
ಜನಪತಿಯು ಹಿಡಿದೆತ್ತಿದನು ಕಾ
ಲನನು ಮೀರುವರಾರು ಪೌರಾ
ತನ ಕೃತ ಧ್ರುವ ಮೃತ್ಯುವನು ಗೆಲುವಾತನಿಲ್ಲೆಂದ ೩೩

ಮೃತ್ಯುವಾರೆಂದವನಿಪತಿ ಮುನಿ
ಪೋತ್ತಮನ ಬೆಳಗೊಳಲು ಬ್ರಹ್ಮನ
ಕಿತ್ತಡದ ಕೋಪದಲಿ ಜನಿಸಿದ ರುದ್ರನಿಂ ಬಳಿಕ
ಮೃತ್ಯುವೆಂಬವಳಾದಳಾ ಸತಿ
ಯುತ್ತ ಕಂಬನಿ ರುಜೆಗಳಾದವು
ತೆತ್ತಿಗರು ಷಡುವರ್ಗ ಕಾಮ ಕ್ರೋಧ ಮೊದಲಾಗಿ ೩೪

ಜನದ ಕೊಲೆಗೆಲಸದ ನಿರೂಪಕೆ
ಮನವ ತಂದಳು ಮೃತ್ಯು ನಿಜ ಸಾ
ಧನ ಸಹಿತ ಕೈಕೊಂಡ ಕೆಲಸವನಾಗುಮಾಡುವಳು
ಜನಪ ದೃಷ್ಟನ್ನಷ್ಟವೆಂಬುದ
ನನುಕರಿಸಿ ಮೂರ್ತಿ ತ್ರಯಂಗಳ
ತನಗೆ ನೆರೆ ವಶಮಾಡಿಕೊಂಡಿಹಳೆಂದು ಮುನಿ ನುಡಿದ ೩೫

ಆ ಮಹಾ ಮೃತ್ಯುವನು ಹುಟ್ಟಿಸಿ
ದಾ ಮಹಾದೇವಾದಿ ದೇವರು
ಕಾಮಿನಿಯು ಕಳುಹಲ್ಕೆ ಬಾರದೆನುತ್ತ ಬೋಧಿಸಲು
ಭೂಮಿಪತಿ ನಿಜಸುತನ ಮೃತಿಯು
ದ್ದಾಮ ತಾಪವ ಕಳೆಯ ಬೇಕೆಂ
ದಾ ಮುನೀಶ್ವರ ಸಂತವಿಟ್ಟನು ಕಂಪಭೂಪತಿಯ ೩೬

ಆದರಾ ಮೃತ್ಯುವಿನ ಕೈವಶ
ವಾದವರನೆನಗರುಹ ಬೇಹುದು
ಮೇದಿನೀಶರೊಳೆಂದು ಬಿನ್ನಹ ಮಾಡಿದನು ನೃಪತಿ
ಆ ದಯಾಳುಗಳರಸನಾ ಶೋ
ಕೋದಧಿಗೆ ವಡಬಾಗ್ನಿ ಸಮನೆನಿ
ಪಾದಿಯಲಿ ಷೋಡಶ ಮಹೀಶರ ಕಥೆಯ ವಿರಚಿಸಿದ ೩೭

ಭರತ ಪೃಥು ಪೌರವ ಭಗೀರಥ
ವರ ಯಯಾತಿ ಮರುತ್ತ ನಹುಷೇ
ಶ್ವರ ಪುರೂರವ ರಂತಿದೇವ ಗಯಾಂಬರೀಷಕರು
ಪರಶುರಾಮ ದಿಲೀಪ ಮಾಂಧಾ
ತರು ಹರಿಶ್ಚಂದ್ರಾದಿ ಪೃಥ್ವೀ
ಶ್ವರರನಂತರು ಮೃತ್ಯುವಶವರ್ತಿಗಳು ಕೇಳೆಂದ ೩೮

ಎಂದು ಷೋಡಶ ರಾಯರಾ ಕಥೆ
ಯಿಂದ ನೃಪತಿಯು ಸಂತವಿಟ್ಟನು
ಬಂದು ಧರ್ಮಜನೈರಗಿದೆನು ಮುನಿರಾಯನಂಘ್ರಿಯಲಿ
ಅಂದು ವೇದವ್ಯಾಸ ಪಾಳಯ
ದಿಂದ ಕಳುಹಿಸಿಕೊಂಡನಿತ್ತ ಮುಂ
ಕುಂದನಭಿಮನ್ಯುವಿನ ಮರಣವನರಿದ ಮನದೊಳಗೆ ೩೯

ಎಂಟನೆಯ ಸಂಧಿ

ಸೂ. ಹಾ ಮಗನೆ ರಣರಂಗ ಧೀರನೆ
ಹಾ ಮದೀಯ ಕುಮಾರ ವೀರನೆ
ಬಾ ಮಗನೆ ಮೊಗದೋರೆನುತ ಹಲುಬಿದನು ಕಲಿ ಪಾರ್ಥ

ಕೇಳು ಜನಮೇಜಯ ಧರಿತ್ರೀ
ಪಾಲ ಸಮಸಪ್ತಕರ ಬಲ ನಿಜ
ಪಾಳಯಕೆ ತಿರುಗಿದುದು ತೀರಿತು ತರಣಿಯಾಟೋಪ
ಕಾಳೆಗವ ತೆಗೆಸಿದರು ಕೌರವ
ರೇಳು ಫಲುಗುಣ ಎನುತ ಲಕ್ಷ್ಮೀ
ಲೋಲ ವಾಘೆಯ ಮರಳಿ ಕೊಂಡನು ಹಯವ ಬೋಳೈಸಿ ೧

ಅಳಿಯನಳಿವನು ಹೇಳಬಾರದು
ತಿಳಿಯಲಿದನಿನ್ನೆನುತ ಚಿಂತಿಸಿ
ನಳಿನಲೋಚನ ಬರುತ ಕಂಡನು ವರ ಸರೋವರವ
ಇಳಿದು ರಥವನು ರಣ ಪರಿಶ್ರಮ
ಗಳಿವೆನೆಂತವೆ ಪಾರ್ಥ ಸಹಿತಾ
ಕೊಳನ ಹೊಕ್ಕನು ಜಗದುದರ ಲೀಲಾವತಾರಕನು ೨

ಧುರದ ಕೋಳಾಹಳದ ಧಗೆ ಡಾ
ವರಿಸಿ ಬಳಲಿ ಧನಂಜಯನು ವರ
ಸರಸಿಯಲಿ ಮುಳುಗಿರಲು ನಸು ನಗುತೊಂದುಪಾಯದಲಿ
ನರನೊಳಿನ್ನರುಹುವೆನು ಘನ ಸಂ
ಗರದೊಳಗಿಡದ ರಾಜ ಕುವರನ
ಮರಣವಾರ್ತೆಯನೆಂದು ಮನದಲಿ ನೆನೆದನಸುರಾರಿ ೩

ಎಲೆ ಸುರೇಂದ್ರ ಕುಮಾರ ಕೇಳ್ ನಿ
ನ್ನೊಲುಮೆಯಣುಗನು ರಣದೊಳಗೆ ರಿಪು
ಬಲವ ಕೋಳಾಹಳಿಸಿ ಕೌರವ ಸುತರು ನೂರ್ವರನು
ತಲೆಯನರಿದನು ಬಳಿಕ ತಾ ಸುರ
ಲಲನೆಯರ ಚೆಲುವಿಂಗೆ ಸೋತನು
ಕಳಿದನೆನುತವೆ ನುಡಿದು ಹರಿ ಮುಳುಗಿದನು ಜಲದೊಳಗೆ ೪

ಆ ಸುತನ ಶೋಕದ ಮರುಕವಾ
ಕಾಶ ವಚನದೊಳಾಯ್ತು ಶಿವ ಶಿವ
ವಾಸುದೇವ ಎನುತ್ತ ಫಲುಗುಣ ಜಲವ ಬಗಿದೆದ್ದು
ಘಾಸಿಯಾದನು ಮಗನಕಟ ಸಂ
ತೋಷವೆಲ್ಲಿಯದೆನುತ ಮಾಯಾ
ವೇಷಿಯನು ಕರೆದನು ವಿಲೋಚನ ವಾರಿ ಪೂರದಲಿ ೫

ಎನಲು ಧಿಮ್ಮನೆ ಕೊಳದೊಳಗೆ ನಿಂ
ದನು ಮುಕುಂದನು ಸುರಪ ಸುತನಾ
ನನವ ನೋಡುತದೇನದೇನೆನೆ ಬಿಕ್ಕಿ ಬಿರಿದಳುತ
ತನಯನಳಿಯದೆ ಮಾಣ ಗಗನ
ಧ್ವನಿಯೊಳಾದುದು ವಾರ್ತೆ ಚಿತ್ತಕೆ
ಮೊನೆಯ ಸರಳಿನೆ ಮರುಳೆ ಬಾ ಎಂದೇರಿದನು ರಥವ ೬

ಹರಿ ಕಿರೀಟಿಗಳಿತ್ತ ಶಿಬಿರಕೆ
ತಿರುಗಿದರು ಸುತಶೋಕ ಸೂಚನೆ
ನರನ ಚಿತ್ತದೊಳಾಯ್ತು ವೆಂಠಣಿಸಿತ್ತು ಪರಿತಾಪ
ಕೊರಳ ಸೆರೆ ಹಿಗ್ಗಿದವು ಕಂಬನಿ
ದುರುಗಿದವು ಕಡುಶೋಕ ಜಠರದ
ಉರವಣಿಸಲಾಕಸ್ಮಿಕದ ಭಯವಾಯ್ತು ಪಾರ್ಥಂಗೆ ೭

ತರಣಿ ತೊಲಗಿದ ಗಗನವೋ ಪಂ
ಕರುಹವಿಲ್ಲದ ಸರಸಿಯೋ ಕೇ
ಸರಿಯ ಲೀಲಾಳಾಪವಿಲ್ಲದ ಬಹಳ ಕಾನನವೊ
ಪರಮತತ್ತ್ವನಿಧಾನವರಿಯದ
ನರನ ವಿದ್ಯಾರಚನೆಯೋ ನಿ
ರ್ಭರ ಭಯಂಕರವಾಯ್ತು ಪಾಳಯವೆನುತ ಬರುತಿರ್ದ ೮

ದೆಸೆದೆಸೆಯ ನೋಡಿದರೆ ಕತ್ತಲೆ
ಮುಸುಗುವುದು ಪರಿತಾಪ ತನುವನು
ಮುಸುಕುವುದು ಮನ ಮರುಗುವುದು ಕಳವಳಿಸುವುದು ಧೈರ್ಯ
ಮುಸೆದ ಸರಳೊಡಲೊಳಗೆ ಮುರಿದವೊ
ಉಸುರಿಗುಬ್ಬಸವಾಯ್ತು ಬಲ್ಲಡೆ
ಬೆಸಸು ಮುರಹರ ಹಿರಿದು ಬಳಲಿಸಬೇಡ ಹೇಳೆಂದ ೯

ತಂದೆ ಧೃತಿಗೆಡಬೇಡ ನಡೆ ನಿಜ
ನಂದನನನಾರೈವೆವೆನುತ್ತೈ
ತಂದು ಕೋಟೆಯ ಕಳೆದು ಬಂದರು ರಾಜ ಬೀದಿಯಲಿ
ಕಂದನಿರವನು ಕಾಣಲಾಪೆನೊ
ಕೊಂದರೆಂಬುದ ಕೇಳುವೆನೊ ತನ
ಗಿಂದು ಗತಿಯೇನೆನುತ ಬಂದನು ರಾಜ ಮಂದಿರಕೆ ೧೦

ಸುರನಗರಿ ನಡುಗಿತ್ತು ಸುರಪತಿ
ಹರನ ನೆನೆದನು ಯಮನ ಪಟ್ಟಣ
ಸರಕುದೆಗೆಯಿತು ಮತ್ಸ್ಯ ಮರೆಹೊಕ್ಕಳು ಮಹೇಶ್ವರನ
ಬಿರುದರಂಜಿತು ದೇಶದೇಶದ
ಧರಣಿಪತಿಗಳಪಾಯವಾಯ್ತೆನೆ
ನರನ ಕಡು ದುಮ್ಮಾನ ನೆರೆ ಹೆದರಿಸಿತು ಮೂಜಗವ ೧೧

ವೀರರಿದಿರುಗ್ಗಡಣೆಗಳ ಕೈ
ವಾರಿಗಳ ಮಾಣಿಸುತಲೈತಹ
ನಾರಿಯರ ರತುನಾರತಿಯ ತಳಿಗೆಗಳ ನೂಕಿಸುತ
ಸಾರಿ ಕೈಗೊಡುವದಟರನು ಕ
ಣ್ಣೋರೆಯಲಿ ಕೋಪಿಸುತ ತನ್ನಯ
ತೇರನಿಳಿದನು ಪಾರ್ಥನಸುರಾರಿಯ ನಿರೂಪದಲಿ ೧೨

ಹರಿ ರಥವನಿಳಿದಂತೆ ಪಾರ್ಥನ
ಭರದ ಕೋಪವ ಕಂಡು ನಿಜ ಮಂ
ದಿರಕೆ ಮೆಲ್ಲನೆ ಜುಣುಗಿದನು ಯಾದವರ ಗಡಣದಲಿ
ವರ ಧನುವ ಶಸ್ತ್ರಾಸ್ತ್ರ ಕವಚವ
ನಿರಿಸಿ ಕೈಗೊಡುವವರ ಕನಲು
ತ್ತರಮನೆಯ ಹೊಕ್ಕನು ಯುಧಿಷ್ಠಿರ ರಾಯನೋಲಗವ ೧೩

ಧರಣಿಪನ ನಿರಿಗೆಯಲಿ ಕಂದನ
ಮರಣವನು ನಿಶ್ಚಯಿಸಿ ಪ್ರಳಯದ
ಹರನ ಕೋಪವ ಕೇಣಿಗೊಂಡನು ತನ್ನ ಚಿತ್ತದಲಿ
ಸುರಿವ ನಯನಾಂಬುಗಳ ಜಲನಿಧಿ
ಗುರವಣಿಸಿದನೊ ವಡಬನೆನೆ ಮುರ
ಹರನ ಮೈದುನನೊಯ್ಯನೈದಿದನವನಿಪಾಲಕನ ೧೪

ಉಕ್ಕಿ ಶೋಕದ ಕಡಲು ಪಾರ್ಥನ
ಮುಕ್ಕುಳಿಸಿತಾ ಶೋಕಶರಧಿಯ
ಹೊಕ್ಕು ಬೆಳೆದುದು ಕೋಪಶಿಖಿವಡಬಾಗ್ನಿಯಂದದಲಿ
ಮಕ್ಕಳೊಳು ನೋಡಿದನು ಕಂದನ
ನಿಕ್ಕಿದಿರಲಾ ಲೇಸು ಮಾಡಿದಿ
ರೆಕ್ಕತುಳದಾಳುಗಳೆನುತ ಭೂಪತಿಗೆ ಪೊಡವಂಟ ೧೫

ತಲೆಯ ಮುಸುಕಿನ ಕಂಗಳೊರತೆಯ
ಜಲದ ದುಗುಡದ ಮುಖದ ಜನಪತಿ
ಫಲುಗುಣನನೆತ್ತಿದನು ತಲೆಗುತ್ತಿದನು ಭೀತಿಯಲಿ
ಮಲಗಿದನು ವರ ಭೀಮ ಸಭೆ ತ
ಲ್ಲಳಿಸಿತರ್ಜುನ ಬಂದನೆನೆ ಬಸ
ವಳಿದು ಬಂದು ಸುಭದ್ರೆ ಪತಿಯಂಘ್ರಿಯಲಿ ಹೊರಳಿದಳು ೧೬

ಕಂದನಾವೆಡೆ ತನ್ನ ಮೋಹದ
ಸಿಂಧುವಾವೆಡೆ ತನುಜವನ ಮಾ
ಕಂದನಾವೆಡೆ ಹೇಳೆನುತ ಫಲುಗುಣನು ತೊದಳಿಸುತ
ನೊಂದು ಮನದಲಿ ಪಾರ್ಥನಾ ಸತಿ
ಯಂದವನು ಕಾಣುತ್ತ ಬೆದೆಬೆದೆ
ಬೆಂದು ಯಮರಾಜನ ಕುಮಾರನ ಮೊಗವ ನೋಡಿದನು ೧೭

ಪತಿಯುಳಿದ ಸತಿಯಿರವು ನಾಯಕ
ರತುನವಿಲ್ಲದ ಪದಕ ದೈವ
ಸ್ತುತಿಗಳಿಲ್ಲದ ಕಾವ್ಯ ರಚನಾ ಭಾವದಂದದಲಿ
ಕೃತಕವಲ್ಲಭಿಮನ್ಯುವಿಲ್ಲದೆ
ಕ್ಷಿತಿಪ ನಿನ್ನಾಸ್ಥಾನ ಮೆರೆಯದು
ಸುತನ ಸುದ್ದಿಯದೇನು ಮರುಗಿಸಬೇಡ ಹೇಳೆಂದ ೧೮

ಬರಲು ಬಹನಿದಿರಾಗಿ ತನ್ನಯ
ವರ ರಥವ ಬಂದೇರುವನು ನಿಜ
ಕರತಳದಿ ಮೈದಡವಿ ಛಾಯವ ನೋಡಿ ಮರುಗುವನು
ತರುಣನಿದಿರೈತರಲು ತನ್ನಯ
ಧುರದ ಬಳಲಿಕೆ ಹಿಂಗುವುದು ಹೇ
ಳರಸ ಕಂದನ ಸುಳಿವ ಕಾಣೆನು ಕರಸಿ ತೋರೆಂದ ೧೯

ಮಗನ ಮಣಿರಥವೆಲ್ಲಿ ಹೂಡಿದ
ವಿಗಡ ತೇಜಿಗಳೆಲ್ಲಿ ಮಣಿವೆಳ
ಗುಗಳ ಛತ್ರವದೆಲ್ಲಿ ಚಾಮರವೆಲ್ಲಿ ಧನುವೆಲ್ಲಿ
ಹಗೆಯುರಲಿ ಹತವಾದನೇ ಹಾ
ಸುಗುಣನಿಲ್ಲಿಗೆ ಬಾರನೇ ತಾ
ಮೊಗವ ಕಾಣದೆ ಹೋದನೇ ಎನಗೇನು ಗತಿಯೆಂದ ೨೦

ಕಂದ ಬಾರೋ ಎನ್ನ ಮನಕಾ
ನಂದ ಬಾರೋ ಬಾಲಕರ ಪೂ
ರ್ಣೇಂದು ಬಾರೋ ರಿಪುಕುಲಾಂತಕ ನಿಪುಣ ಮುಖದೋರೊ
ತಂದೆ ನಿನಗೆನ್ನಲ್ಲಿ ಋಣ ಸಂ
ಬಂಧ ಸವೆದುದೆ ಶಿವ ಶಿವಾ ತಾ
ಮಂದಭಾಗ್ಯಂಗಣುಗ ದಕ್ಕುವನಲ್ಲ ಎನಗೆಂದ ೨೧

ಅಸಮ ಪದ್ಮವ್ಯೂಹವನು ಭೇ
ದಿಸುವನಾವವನೆನಲು ಕೇಳಿದು
ಶಿಶುತನದಲಾಹವಕೆ ನಡೆದನು ನಾವು ಬೇಡೆನಲು
ಹೊಸ ಮದದ ವನದಂತಿ ಕದಳಿಯ
ಕುಸುರಿದರಿದಂದದಲಿ ಘನ ಪೌ
ರುಷವ ಮಾಡಿದನೆಂದನವನೀಪಾಲನನುಜಂಗೆ ೨೨

ಅರಿನೃಪಾಲರ ನೂರು ಮಕ್ಕಳ
ಶಿರವನರಿದನು ಷಡುರಥರ ಮಿಗೆ
ಪರಿಭವಿಸಿದನು ರಿಪುಬಲವನಡ ಹಾಯ್ದಾನೆವರಿವರಿದು
ಧುರಕೆ ಹೆರತೆಗೆದೆಮ್ಮ ನಾಲ್ವರ
ಸರಿದು ಹೋದಭಿಮಾನವನು ಕಾ
ಯ್ದುರವಣಿಸಿ ಮಗನೇರಿದನು ವಾಸವನ ಗದ್ದುಗೆಯ ೨೩

ಈ ನಕುಳನೀ ಭೀಮನೀ ಪಾಂ
ಚಾಲನೀ ಸಹದೇವನೀ ಭೂ
ಪಾಲನೀ ಸಾತ್ಯಕಿ ಯುಧಾಮನ್ಯೂತ್ತಮೌಂಜಸರು
ಕಾಳೆಗದೊಳಂಗೈಸಲಮ್ಮದೆ
ಬಾಲಕನ ನೂಕಿದಿರಲಾ ನಿ
ಮ್ಮಾಳುತನವನು ತೋರಿದಿರಲಾ ತನ್ನ ಮೇಲೆಂದ ೨೪

ವೀರರಿನಿಬರು ನೆರೆದು ರಿಪುಪರಿ
ವಾರವನು ಹೊಗಲಂಜಿ ಹೊರಗಣ
ಮಾರಿಹೊರಹೊರಗೆಂಬವೊಲು ನಂದನನ ನೂಕಿದಿರಿ
ಆರ ನಂಬಲುಬಹುದು ನಿಮಿಷವು
ದೂರ ತಾ ತೊಲಗಿದರೆ ತನ್ನ ಕು
ಮಾರನಿದ್ದರೆ ಹರಿವ ಕಂಡಿರಿ ಹೊಲ್ಲಹೇನೆಂದ ೨೫

ಕೆಡೆನುಡಿದು ಫಲವೇನು ಸಾಕಿ
ನ್ನೊಡೆಯರಿಲ್ಲದ ವಸ್ತುವಾದೆನು
ಕಡೆಗೆ ಧರ್ಮಜ ಹೇಳು ಕೊಂದವನಾರು ನಂದನನ
ಕಡುವಗೆಯದಾರವರ ಬಲದಲಿ
ನುಡಿ ನಿದಾನವನವನ ಜೀವಕೆ
ಹಿಡಿ ಮಹೀಪತಿ ಸಂಚಕಾರವನೆಂದನಾ ಪಾರ್ಥ ೨೬

ಹೇಳಿ ಫಲವೇನಿನ್ನು ಶೋಕ
ಜ್ವಾಲೆಗಿಂಧನವೆನ್ನ ನುಡಿ ರಿಪು
ಜಾಲವನು ನೀ ಖಂಡಿಗಳೆ ಬಹೆವಾವು ಬಳಿಸಲಿಸಿ
ಕಾಳೆಗವ ಜಯಿಸುವೆವು ನಡೆಯೆನೆ
ಬಾಲನುರವಣಿಸಿದನು ಮಸಗಿದ
ಕಾಲರುದ್ರನ ರೂಪ ತಾಳ್ದನು ವೈರಿ ಸೇನೆಯಲಿ ೨೭

ಅರಸು ಮಕ್ಕಳ ಕೊಂದನೈನೂ
ರ್ವರನು ಮೂರಕ್ಷೋಣಿ ಸೈನ್ಯವ
ನೊರಸಿದನು ಮಸೆಗಾಣಿಸಿದನಗ್ಗದ ಮಹಾರಥರ
ಧುರವ ಗೆಲಿದನು ಪಡಿತಳಿಸಿ ನಾ
ವುರವಣಿಸಲಡಹಾಯ್ದು ನಮ್ಮನು
ಹರನ ವರವುಂಟೆಂದು ತಡೆದನು ಸಿಂಧು ಭೂಪಾಲ ೨೮

ವಿರಥನಾದನು ಭೀಮ ನಕುಳನು
ತಿರುಗಿದನು ಸಹದೇವ ಕೊರಳಿನ
ಹರಣದಲಿ ಹಿಮ್ಮೆಟ್ಟಿದನು ದ್ರುಪದಾದಿ ನಾಯಕರು
ಧುರದೊಳೋಸರಿಸಿದರು ಸೈಂಧವ
ಹರನ ವರದಲಿ ನಮ್ಮ ಗೆಲಿದನು
ಮರಣವನು ಕಂದಂಗೆ ತಂದವನವನು ಕೇಳೆಂದ ೨೯

ಇನ್ನು ಹೇಳುವುದೇನೆನುತ ಕೈ
ಸನ್ನೆಯಲಿ ಮಾತಾಡಿ ಭೂಪತಿ
ಬೆನ್ನತೆತ್ತನು ಭೀಮಸೇನನ ವಿಪುಲ ವಕ್ಷದಲಿ
ತನ್ನ ಮರೆದನು ನಯನ ಧಾರಾ
ಭಿನ್ನ ಚಾರು ಕಪೋಲನಿರೆ ಸಂ
ಪನ್ನ ಶೋಕಾಗ್ನಿಯಲಿ ಬೆಂದುದು ಸಕಲ ಜನಹೃದಯ ೩೦

ಮುಚ್ಚಿದನು ಕಂಗಳನು ಧೈರ್ಯದ
ಕೆಚ್ಚೆನೆದೆ ಕರಗಿತ್ತು ಶೋಕದ
ಕಿಚ್ಚು ಕೊಂಡುದು ಮನವನಖಿಳೇಂದ್ರಿಯದ ಸುಳಿವಡಗೆ
ಎಚ್ಚರಡಗಿತು ನೆಲಕೆ ಕೈಗಳ
ಬಿಚ್ಚಿ ಬಿದ್ದನು ಪುತ್ರವಿರಹದ
ಹೆಚ್ಚಿಗೆಯ ತಾಪವನು ಹೆಸರಿಡಲರಿಯೆನರ್ಜುನನ ೩೧

ಘನ ವಿಕರ್ಮದ ವಿಲಗದಲಿ ನಿಜ
ತನುಜ ಶೋಕದ ತಗಹಿನೊಳಗ
ರ್ಜುನನು ಧೈರ್ಯ ದರಿದ್ರನಾದನದೇನ ಹೇಳುವೆನು
ಮನ ಬಳಲಿ ಮೈ ಮರೆದು ತಾಪದಿ
ಕನಸ ಕಂಡನು ಝುಡಿಕೆ ಮಿಗೆ ಝೊ
ಮ್ಮನ ಸುಷುಪ್ತಿಯೊಳಿದ್ದು ನಿಮಿಷದೊಳೆದ್ದು ಕಣ್ದೆರೆದ ೩೨

ಅಳಲ ಮುಕ್ಕುಳಿಸಿದನು ಮೋಹದ
ಬೆಳವಿಗೆಯ ಗವಸಣಿಸಿದನು ಕಳ
ಕಳಿಕೆ ಹಿಂಗಿದುದಶ್ರು ಜಲವನು ಕಂಗಳಲಿ ಕುಡಿದು
ಪ್ರಳಯ ರುದ್ರನ ಕೋಪಶಿಖಿ ವೆ
ಗ್ಗಳಿಸಿತೆನೆ ಕಂಗಳಲಿ ಕಿಡಿಗಳು
ತುಳುಕಿದವು ರೌದ್ರಾನುಭಾವದ ರಸದ ಭಂಗಿಯಲಿ ೩೩

ಹೇಳು ಹೇಳಿನ್ನೇನು ಮಾರಿಯ
ಮೇಳವಾಡಿದನೇ ಜಯದ್ರಥ
ನಾಳುತನವನು ಬವರದಲಿ ತನ್ನೊಡನೆ ತೋರಿದನೆ
ನಾಳೆ ಬೈಗಿಂದೊಳಗೆ ರಿಪುವನು
ಸೀಳುವೆನು ಸೀಳದಿರೆ ಧರ್ಮಜ
ಕೇಳು ಭಾಷೆಯನೆಂದು ಮಿಗೆ ಗರ್ಜಿಸಿದನಾ ಪಾರ್ಥ ೩೪

ಹರನ ದುರ್ಗದಲಿರಲಿ ವೇಣ್ಣಾ
ಹರಿಯ ಕಡಲೊಳಗಿರಲಿ ಬ್ರಹ್ಮನ
ಕರಕಮಂಡಲದೊಳಗೆ ಹುದುಗಲಿ ರವಿಯ ಮರೆಹೊಗಲಿ
ಉರಗ ಭುವನದೊಳಿರಲಿ ಮೇಣ್ ಸಾ
ಗರವ ಮುಳುಗಲಿ ನಾಳೆ ಪಡುವಣ
ತರಣಿ ತೊಲಗದ ಮುನ್ನ ಕೊಲುವೆನು ವೈರಿ ಸೈಂಧವನ ೩೫

ಕುರುಬಲವ ಬಿಟ್ಟರೆ ಯುಧಿಷ್ಠಿರ
ನರಮನೆಯ ಹೊಕ್ಕರೆ ಮುರಾರಿಯ
ಶರಣುವೊಕ್ಕರೆ ಸರ್ವಥಾ ಕೊಲ್ವೆನು ಜಯದ್ರಥನ
ಧುರದೊಳುಳಿದಂತಿಂದ್ರ ಯಮ ಭಾ
ಸ್ಕರ ವಿರಂಚಿಗಳಡ್ಡವಿಸಿದರೆ
ಶಿರವನರಿವೆನು ನಾಳೆ ಬೈಗಿಂದೊಳಗೆ ಸೈಂಧವನ ೩೬

ಗುರುವಿಘಾತಿಯ ವೇದನಿಂದಾ
ಪರನ ಪರದಾರಾಭಿಗಾಮಿಯ
ಹರ ಮುರಾರಿಯ ಭೇದವಾದಿಯ ವಿಪ್ರನಿಂದಕನ
ಪರಗುಣಾಸೂಯಕನ ಹಿಂಸಾ
ಪರನ ಹಿಸುಣನ ಶಠನ ಕೃಪಣನ
ನರಕವಾಗಲಿ ಕೊಲ್ಲದಿದ್ದರೆ ನಾಳೆ ಸೈಂಧವನ ೩೭

ಖಳನ ಧೂರ್ತನ ನಾಸ್ತಿಕನ ಚಂ
ಚಳನ ಪರನಿಕ್ಷೇಪಹಾರಿಯ
ದಳಿತ ಮರ್ಯಾದನ ಕೃತಘ್ನನ ಭರ್ತೃನಿಂದಕನ
ಸ್ಖಲಿತ ವಚನನ ಯೋಗಿ ನಿಂದಾ
ಕುಳನ ವಿಕಳವ್ರತನ ಲೋಕಾ
ವಳಿಗಳಾಗಲಿ ಕೊಲ್ಲದಿದ್ದರೆ ನಾಳೆ ಸೈಂಧವನ ೩೮

ನಾಳೆ ಖಚರೀಜನದ ತೊಡವಿನ
ತೋಳನವನಸು ನೆಮ್ಮದಿದ್ದರೆ
ಕಾಳೆಗದೊಳೆನ್ನೊಡಲ ಬಿಸುಡುವೆನಗ್ನಿ ಕುಂಡದಲಿ
ಕೇಳು ಧರ್ಮಜ ಎಂಬ ನುಡಿಗಳು
ಕಾಳೆಗದ ಸೊಗಸಾಗೆ ಲಕ್ಷ್ಮೀ
ಲೋಲ ಕೇಳುತ ಬಂದು ಪಾರ್ಥನ ಬಿರುದ ಹೊಗಳಿದನು ೩೯

ತೀರಿತಿನ್ನೇನರಿ ನೃಪನ ಸಂ
ಸಾರ ನೀನೇರಿಸಿದ ನುಡಿಗಳ
ನಾರು ಕಳಚಲು ಬಲ್ಲರಗ್ಗದ ದೇವ ದೈತ್ಯರಲಿ
ವೀರ ರಾಮನ ನುಡಿಗೆ ರಾಮನು
ದಾರ ಬಾಣಕೆ ನಿನ್ನ ನುಡಿಗಳು
ಕೂರಲಗು ಸಮಜೋಳಿ ಜಗದೊಳಗೆಂದನಸುರಾರಿ ೪೦

ನಳಿನನಾಭನು ಪಾಂಚಜನ್ಯವ
ವೊಳಗಿದನು ನಿಜದೇವದತ್ತವ
ಸೆಳೆದು ಫಲುಗುಣನೂದಿದನು ಗಾಂಡಿವವನೊದರಿಸುತ
ಪ್ರಳಯ ದಿನದಲಿ ತಿವಿವ ಸಿಡಿಲ
ವ್ವಳಿಸುವಂತಿರೆ ರೌದ್ರರವ ಘುಳು
ಘುಳಿಸಿ ತಲ್ಲಣಿಸಿತ್ತು ಕೌರವ ರಾಯ ಪರಿವಾರ ೪೧

ಏನಿದೆತ್ತಣ ರಭಸ ತ್ರೈಲೋ
ಕ್ಯಾನುಕಂಪನವಾಯ್ತು ಶಿವ-ಎನು
ತಾ ನರೇಂದ್ರ ನಿಕಾಯ ನಡುಗಿತು ಕೌರವೇಶ್ವರನ
ಸೇನೆ ತಲೆಕೆಳಕಾಯ್ತು ಪಾರ್ಥನ
ಸೂನುವಿನ ಮರಣದಲಿ ಮಂತ್ರ
ಧ್ಯಾನ ನಮಗಾಯ್ತೆಂದು ತಲ್ಲಣಿಸಿತ್ತು ನೃಪಕಟಕ ೪೨

ಎಲೆಲೆ ಕವಿ ಕಳ್ಳೇರಿ ಹಾಯ್ದರು
ಕೊಲೆಗಡಿಗರೋ ನೃಪರು ಮಗ ಮಡಿ
ದಳಲು ಮಿಗಲನ್ಯಾಯಕೆಳಸಿದನೇ ಯುಧಿಷ್ಠಿರನು
ಬಲವ ಕರೆ ಕರೆ ಎನುತ ಕಾಹಿನ
ತೊಳಲಿಕೆಯ ನಾಯಕರು ಗಜರಲು
ಬೆಳಗಿದವು ಬೊಂಬಾಳ ದೀವಿಗೆ ನೆರೆದುದತಿರಥರು ೪೩

ಪಾಳಯವು ಗಜಬಜಿಸೆ ತೊಳಲಿಕೆ
ಯಾಳು ನೆರೆದುದು ಕೋರಡಿಯ ಮುಳು
ವೇಲಿಗಾಂತರು ಬೇಹ ಹರಿಸಿದರಖಿಳ ದೆಸೆದೆಸೆಗೆ
ಮೇಲುಗುದುರೆಗಳೊದಗಿದವು ಭೂ
ಪಾಲಕರು ತಲೆಗೆದರಿ ಹುಯ್ಯಲ
ನಾಲಿಸುತ ಹೊರವಂಟು ತಳಕೆಳಕಾಯ್ತು ನೃಪಕಟಕ ೪೪

ಕಡಿಯಣವನಾನೆಗಳ ಮೋರೆಗೆ
ತೊಡಸಿದರು ದಂತಿಗಳ ಹೆಗಲಲಿ
ನಿಡು ನೊಗನ ಕಟ್ಟಿದರು ಕಿವಿಯಲಿ ಕೀಲಿಗಳ ಸರಿಸಿ
ಜಡಿವ ಗುಳವನು ಹಾಯ್ಕಿ ಬೀಸಿದ
ರೊಡನೊಡನೆ ಹಕ್ಕರಿಕೆ ಜೋಡಿನ
ಲಡಸಿ ಗಾಲಿಯ ಬಿಗಿದು ಗಜಬಜಿಸಿತ್ತು ನೃಪಕಟಕ ೪೫

ಶಿರದೊಳಾಂತರು ಮೊಚ್ಚೆಯವನಾ
ಚರಣದಲಿ ಸೀಸಕವ ತೋಳಲಿ
ಬರಿಯ ಕವಚವ ಬೆನ್ನಿನಲಿ ಕಟ್ಟಿದರು ಕೈಹೊಡೆಯ
ಸುರಗಿಗಳನೀಡಾಡಿ ತಿರುಹಿದ
ರೊರೆಗಳನು ಬತ್ತಳಿಕೆಯನು ಬಿಲು
ದಿರುವಿನಲಿ ಮೋಹಿದರು ತಲ್ಲಣಿಸಿತ್ತು ತಮತಮಗೆ ೪೬

ಕರಿಗಳನು ರಾವುತರು ಜೋಧರು
ತುರಗವನು ಕಾಲಾಳು ರಥವನು
ವರ ಮಹಾತಥರಿಟ್ಟ ಸಬಳ ಕಠಾರಿಯುಬ್ಬಣವ
ಧುರದ ಭರ ಮಿಗೆ ಕೊಂಡು ಬೆದರ
ಳ್ಳಿರಿಯೆ ಬೆರಗಿನ ಬಳಿಯಲೊದಗಿ
ತ್ತರರೆ ಪಾಂಡವರೆನುತ ಹೊಯ್ದಾಡಿದರು ತಮ್ಮೊಳಗೆ ೪೭

ಹರಿದು ಬೇಹಿನ ಚರರು ಪಾಂಡವ
ರರಮನೆಯ ಹೊಕ್ಕರಿದು ಮರಳಿದು
ಬರುತ ಕಟಕದ ಗಜಬಜವನಲ್ಲಲ್ಲಿ ಮಾಣಿಸುತ
ನೆರವಿ ನಗೆಗೆಡೆಯಾಗೆ ಮುಸುಕಿನ
ಮುರುವಿನಲಿ ಪಾಳಯವ ಹೊಕ್ಕರು
ಗರುವ ಮನ್ನೆಯ ಮಂಡಳೀಕರು ಕೇಳ್ದರೀ ಹದನ ೪೮

ರವಿತನುಜ ಗುರುಸೂನು ಭೂರಿ
ಶ್ರವ ಸುಲೋಚನ ಶಲ್ಯ ಕೃಪ ಸೈಂ
ಧವ ವಿವಿಂಶತಿ ಚಿತ್ರಸೇನರು ಕರ್ಣನಂದನರು
ತವತವಗೆ ಬೆದರಿದರು ರಿಪು ಕೌ
ರವನ ಹೊರಗೈತಂದರಂದಿನ
ರವದ ರೌದ್ರದ ರಾಜಕಾರ್ಯವ ತಿಳಿವ ತವಕದಲಿ ೪೯

ಇರುಳು ಬೇಹಿನ ಚರರು ಪಾರ್ಥನ
ನಿರುಪಮಿತ ಗಾಢ ಪ್ರತಿಜ್ಞಾ
ಚರಿತವನು ಕೌರವನ ಸಭೆಯಲಿ ತಂದು ಹರಹಿದರು
ಮರಣ ಸೈಂಧವಗಲ್ಲದಿದ್ದರೆ
ಮರಣ ಪಾರ್ಥಂಗಲ್ಲದೆಡೆಯಲಿ
ಪರಿಹರಿಸುವುದ ಕಾಣೆವೆಂದರು ಚರರು ಭೂಪತಿಗೆ ೫೦

ಲೇಸು ಲೇಸಭಿಮನ್ಯುವೀ ದು
ಶ್ಶಾಸನನ ಮಗನಿಂದ ರಣದಲಿ
ಘಾಸಿಯಾದನು ನಾವು ಮಾಡಿದುದೇನು ಪಾರ್ಥಂಗೆ
ಈಸನೇರಿಸಿ ನುಡಿದ ಪಾರ್ಥನ
ಭಾಷೆ ಹೊಳ್ಳಾಗದು ಸುಯೋಧನ
ದೇಶವನು ಬೀಳ್ಕೊಂಡೆನೆಂದನು ಸೈಂಧವನು ಸಭೆಗೆ ೫೧

ಅಳಲಿ ಮನೆಯಲಿ ಕಾಳುಗೆಡೆದಡೆ
ಫಲವಹುದೆ ನಿಜಸತಿಯ ಹಿಡಿದಾ
ನೆಳಸುವಂದಿನ ಭೀಮ ಮಾಡಿದ ಭಾಷೆಯೇನಾಯ್ತು
ಅಳುಕದಿರು ಪರಿವಾರವಿದೆ ಕೊಳು
ಗುಳಕೆ ವಜ್ರದ ಜೋಡು ದ್ರೋಣನು
ಬಲವಿಹೀನನೆ ತಾನೆನುತ ಕುರುರಾಯ ಗರ್ಜಿಸಿದ ೫೨

ಆವನೋಲೆಯಕಾರತನ ಗಾಂ
ಡೀವಿಯಿದಿರಲಿ ಫಲಿಸುವುದು ಮೇ
ಣಾವನದ್ಭುತ ಮಂತ್ರಶಕ್ತಿಗೆ ಮಣಿವನಸುರಾರಿ
ಕಾವರಿಲ್ಲರ್ಜುನನ ಕೈಯಲಿ
ಸಾವವರು ನಾವಲ್ಲೆನಲು ನರ
ದೇವ ಕುರುಪತಿ ಮತ್ತೆ ನುಡಿದನು ನಗುತ ಸೈಂಧವಗೆ ೫೩

ಗರುಡನೂರವರೆರೆವರೇ ನಾ
ಗರಿಗೆ ತನಿಯನು ನಮ್ಮ ಬಲದಲಿ
ಗುರುವಲಾ ಪಾಲಕನು ಕೈಕೊಂಬನೆ ಧನಂಜಯನ
ನರನ ನುಡಿಯನು ಹೊಳ್ಳು ಗಳೆವರೆ
ಚರಣದಲಿ ಬೀಳುವೆವು ನಡೆಯೆಂ
ದಿರುಳು ದ್ರೋಣನ ಮನೆಗೆ ಬಂದನು ಕೌರವರ ರಾಯ ೫೪

ನೆಗಹಿದವು ಕೈದೀವಿಗೆಯು ಸಾ
ಲುಗಳು ಹೊಂದಂಡಿಗೆಯು ದೂವಾ
ರಿಗಳು ವೆಂತಣಿಸಿದರು ಸೀಗುರಿ ಮೊಗವ ಮೋಹಿದವು
ಉಗಿದ ಕಡಿತಲೆ ಮುಸುಕಿದವು ಚೌ
ರಿಗಳ ಡೊಂಕಣಿ ತುರುಗಿದವು ಮೌ
ಳಿಗಳ ಮಸ್ತಕದವರು ನೆಲನುಗ್ಗಡಿಸಲೈತಂದ ೫೫

ಗರುಡಿಯೊಡೆಯನ ಪಾಳಯಕೆ ಕಡು
ಭರದಲೈತರೆ ಕೌರವೇಂದ್ರನ
ಬರವಿದೇನೆಂದಿದಿರು ಬಂದನು ದ್ರೋಣನಿದಿರಾಗಿ
ಧರಣಿಪನ ಸತ್ಕರಿಸಿ ನೆಲೆಯು
ಪ್ಪರಿಗೆಗೊಯ್ದನು ನುಸುಳುಗಂಡಿಯೊ
ಳುರವಣಿಸಿದರು ಕರ್ಣ ಕೃಪ ಮೊದಲಾದ ಬೇಹವರು ೫೬

ವೀಳೆಯವ ಕರ್ಪುರವನಿತ್ತು ನೃ
ಪಾಲರನು ಕರ್ಣಾದಿ ಸುಭಟರ
ಸಾಲ ಮನ್ನಿಸಿ ದ್ರೋಣ ಬೆಸಕೊಂಡನು ಸುಯೋಧನನ
ಕಾಳಿಕೆಯು ಕೈಕೊಂಡು ಸಿರಿಮೊಗ
ಹೇಳುತಿದೆ ಭೀತಿಯನು ನಿನ್ನನ
ಕಾಳೆಗದ ಜಯ ನಮ್ಮದೀ ದುಮ್ಮಾನವೇನೆಂದ ೫೭

ಏನ ಹೇಳುವೆನರ್ಜುನನು ನಿಜ
ಸೂನು ಮಡಿಯೆ ದುರಾಭಿಮಾನದ
ಲೇನನೆಂದನು ಕೇಳಿರೈ ಕರ್ಣಾದಿ ಮಂತ್ರಿಗಳು
ತಾನು ಗಡ ಸೈಂಧವನ ತಲೆಯನು
ಭಾನುವಡಗದ ಮುನ್ನ ಕೊಂಬೆನು
ಹೀನನಾದರೆ ಹೊಗುವೆನೆಂದನು ಹವ್ಯವಾಹನನ ೫೮

ಕೊಂದವನು ದುಶ್ಶಾಸನನ ಮಗ
ಬಂದುದಪರಾಧವು ಜಯದ್ರಥ
ಗಿಂದಿವನ ಪತಿಕರಿಸಬೇಹುದು ರಣದೊಳರ್ಜುನನ
ಮುಂದುಗೆಡಿಸಲೆಬೇಕು ಭೀಷ್ಮರು
ಸಂದ ಬಳಿಕೆಮಗಾಪ್ತ ನೀನೇ
ತಂದೆ ನೀನೆಂದರಸನೆರಗಿದನವರ ಚರಣದಲಿ ೫೯

ಮುಕುಟವನು ನೆಗಹಿದನು ಭೂಪಾ
ಲಕ ನಿದಾನಿಸಿ ಕೇಳು ಶಶಿಕುಲ
ಮುಕುರವಿತ್ತಂಡದಲಿ ನೆನೆಯೆವು ಭೇದಬುದ್ಧಿಗಳ
ಯುಕುತಿಯಿನ್ನಿದಕಿಲ್ಲ ಪಾರ್ಥನ
ಶಕುತಿ ಘನವೀ ರಾಜಕಾರ್ಯಕೆ
ಚಕಿತರಾದೆವು ರಾಯ ಚಿತ್ತೈಸೆಂದನಾ ದ್ರೋಣ ೬೦

ಕಾವಡೆನ್ನಳವಲ್ಲ ಮೇಣ್ ಗಾಂ
ಡೀವಿ ಕೊಲುವವನಲ್ಲ ಕೃಷ್ಣನು
ಕಾವರೆಯು ಕೊಲುವರೆ ಸಮರ್ಥನು ವೇದಸಿದ್ಧವಿದು
ಜೀವಜಾತಕ್ಕೊಡೆಯನಾ ರಾ
ಜೀವನಾಭನು ಬರಿಯಹಂಕಾ
ರಾವಲಂಬನದಿಂದ ಕೆಡುತಿಹುದಖಿಳ ಜಗವೆಂದ ೬೧

ಇದು ಮುರಾರಿಯ ಲೀಲೆಗೋಸುಗ
ಉದಯಿಸಿದ ಜಗವಿದರೊಳೊಬ್ಬನ
ಸದೆವನೊಬ್ಬನ ಹಿಡಿದು ಸಲಹುವನೊಬ್ಬನೊಬ್ಬನಲಿ
ಇದರೊಳಾತಂಗಿಲ್ಲ ಕರುಣಾ
ಸ್ಪದತೆ ನಿಷ್ಕಾರುಣ್ಯ ಭೂಯಂ
ತ್ರದ ವಿನೋದಕ್ರೀಡೆ ಕೃಷ್ಣನದೆಂದನಾ ದ್ರೋಣ ೬೨

ನರನ ನುಡಿಯೆಂದಿರದಿರವು ಮುರ
ಹರನ ನುಡಿಗಳು ಕೇಳು ಗಿರಿಗ
ಹ್ವರದ ನುಡಿಯೋ ಜಂಗಮ ಧ್ವನಿಯೋ ವಿಚಾರಿಸಲು
ನರನ ನುಡಿ ಹೊಳ್ಳಾಗದಾ ಮುರ
ಹರನ ಬಲುಹುಳ್ಳನ್ನ ಬರವೆನ
ಲರಸನಾಲಿಸಿ ಕೇಳುತಿರ್ದನು ಕೈಯ ಗಲ್ಲದಲಿ ೬೩

ಕೇಳುತಿರ್ದೈ ಕರ್ಣ ಬೊಮ್ಮವ
ಕೇಳ ಬಂದೆವೆ ನಾವು ನಾಳಿನ
ಕಾಳೆಗದ ಜಯವುಂಟುವ ಬೆಸಗೊಳ ಬಂದೆವಿಂದೀಗ
ಹೇಳುತಿದ್ದರಸಂಗತವನಿದು
ಹೋಲುವುದಲೇ ಮುನಿ ಕುಮಾರರು
ಕಾಳೆಗವನೇಗುವರು ಬಳಿಕೇನೆಂದನಾ ಭೂಪ ೬೪

ಕಟಕಿಯೇಕಿದು ವಿಪ್ರರಹೆವು
ತ್ಕಟದ ಶೌರಿಯವಿಲ್ಲ ನಾವ್ ದಿಟ
ಪುಟವ ನುಡಿದರೆ ಖಾತಿಯಾದುದೆ ನಿಮ್ಮ ಚಿತ್ತದಲಿ
ನಿಟಿಲಲೋಚನ ನೋಡುವರೆ ದು
ರ್ಘಟವೆನಿಪ ಮೋಹರದ ಬಲು ಸಂ
ಘಟನೆಯನು ತೋರುವೆನು ಚಿಂತಿಸಬೇಡ ನೀನೆಂದ ೬೫

ವ್ಯೂಹವನು ರಚಿಸುವೆನು ನಾಳಿನೊ
ಳಾಹವಕೆ ತಳತಂತ್ರವೊಂದೇ
ಮೋಹರಕೆ ನಡೆತರಲಿ ಷಡುರಥರಾದಿ ಯಾದವರು
ಸಾಹಸವನುದಯದಲಿ ತೋರುವೆ
ಬಾಹುಬಲವನು ಸೈಂಧವನ ಮೈ
ಗಾಹ ಬಲಿವೆನು ಕಾಂಬೆ ಕೃಷ್ಣನ ನೆನಹ ಬಳಿಕೆಂದ ೬೬

ಸಾಕು ನೀ ಚಿಂತಿಸಲು ಬೇಡ ಪಿ
ನಾಕಧರನಡಹಾಯ್ದಡೆಯು ನಾ
ವಾಕೆವಾಳರು ರಣಕೆ ಕೃಷ್ಣಾರ್ಜುನರ ಪಾಡೇನು
ನೂಕಿ ನೋಡಾ ಸೈಂಧವನನೇ
ಕೈಕವೀರರು ಕಾವೆವೆಂದು
ದ್ರೇಕ ಮಿಗೆ ಗರ್ಜಿಸಿತು ಕರ್ಣಾದಿಗಳು ತಮತಮಗೆ ೬೭

ಬೀಳುಕೊಂಡುದು ರಾಜಸಭೆ ತ
ಮ್ಮಾಲಯಕೆ ಸೈಂಧವನು ಚಿಂತಾ
ಲೋಲನಿರ್ದನು ಮರಣಜೀವನ ಜಾತ ಸಂಶಯನು
ಕೋಲ ಗುರುವಿನ ವಿವಿಧ ರಚನೆಯ
ಕೇಳಿದನು ನಸುನಗುತ ಪಾರ್ಥಗೆ
ಹೇಳಿದನು ಕರುಣದಲಿ ಗದುಗಿನ ವೀರ ನಾರಾಯಣ ೬೮

ಒಂಬತ್ತನೆಯ ಸಂಧಿ

ಸೂ. ಜಯಸಮರ ಸೌರಂಭನಾಹವ
ಭಯ ಬಹಿರ್ಮುಖನಸ್ತ್ರವಿದ್ಯಾ
ನಿಯತಮತಿ ಮೋಹರಿಸಿ ಸಮರಕೆ ದ್ರೋಣನನುವಾದ

ಕೇಳು ಜನಮೇಜಯ ಧರಿತ್ರೀ
ಪಾಲ ಫಲುಗುಣ ಹೊಕ್ಕನಾಯುಧ
ಶಾಲೆಯನು ತೆಗೆಸಿದನು ಧನು ಮೊದಲಾದ ಕೈದುಗಳ
ಸಾಲರಿದು ನಿಲಿಸಿದನು ನಿಶಿತ ಶ
ರಾಳಿ ಚಾಪ ಕೃಪಾಣ ಪರಶು ತ್ರಿ
ಶೂಲ ಮುದ್ಗರ ಚಕ್ರ ಸೆಲ್ಲೆಹ ಶಕುತಿ ತೋಮರವ ೧

ಸವಗ ಮೊಚ್ಚೆಯ ಜೋಡು ಸೀಸಕ
ಕವಚ ಬಾಹುರಿಕೆಗಳ ನಿಲಿಸಿದ
ನವಿರಳಾಕ್ಷತೆ ಗಂಧ ಪುಷ್ಪ ಸುಧೂಪ ದೀಪದಲಿ
ವಿವಿಧ ಸತ್ಕಾರದಲಿ ದುರ್ಗಾ
ಸ್ತವವ ಜಪಿಸಿದ ವರ ಘೃತೋದನ
ನವರುಧಿರ ಮಾಂಸೋಪಹಾರಂಗಳಲಿ ಪೂಜಿಸಿದ ೨

ಒಡನೆ ಗಜರುವ ವಾದ್ಯದಲಿ ಕೆಂ
ಪಡರಿದೋಗರಸಹಿತ ಭೂತಕೆ
ಬಡಿಸಿದರು ಮಾಂತ್ರಿಕರು ಬಲಿಗೆದರಿದರು ದೆಸೆದೆಸೆಗೆ
ತೊಡವು ವಸನಾದಿಗಳಲೊಪ್ಪಂ
ಬಡುವ ಬಲಿಯನು ಹರಿಯೊಳರ್ಪಿಸಿ
ನಡುವಿರುಳು ಕಲಿಪಾರ್ಥನರ್ಚಿಸಿದನು ನಿಜಾಯುಧವ ೩

ಇರುಳಿನದ್ಭುತ ರವವನಾಲಿಸಿ
ಮುರಮಥನ ನೀ ಫಲುಗುಣನ ಸಂ
ಗರ ಜಯೋದ್ಧತಮಂತ್ರವೆಂದನು ದಾರುಕನ ಕರೆದು
ಹರ ಮಹಾಸೇನಾದಿಗಳು ಗೆಲ
ಲರಿದು ನಾಳಿನ ಬವರವಿನ್ನೀ
ನರನ ಜಯವೆಂತೆನುತ ಚಿಂತಿಸುತಲ್ಲಿಗೈತಂದ ೪

ರಚನೆ ಚೆಲುವಿದು ನಾಳಿನಾಹವ
ಖಚರ ಕಿಂಪುರುಷರಿಗೆ ಅಸದಳ
ವಚಲಬಲಗಾಂಡಿವಿಗೆ ಹರಿಯದು ಸುಪ್ತಿಯೊಳಗವನ
ಉಚಿತದಲಿ ಕೊಂಡೊಯ್ದು ರುದ್ರನ
ವಚನದನುವನು ತಿಳಿವೆನೆಂದಾ
ಶಚಿಯಗಂಡನ ಮಗನನೀಶನ ಪದವ ಕಾಣಿಸಿದ ೫

ಶಿವನ ಕರುಣಾಲಾಭ ಪುಣ್ಯ
ಪ್ರವರ ಪಾರ್ಥನ ಮುನ್ನಿನಂದದ
ಲವನಿಗಿಳುಹಿದ ನಿಖಿಳದಿವ್ಯಾಯುಧದ ವೇದಿಕೆಗೆ
ಸವೆದುದಿರುಳಿಂದೂಪಲಂಗಳ
ನಿವಹ ಬಲಿದುದು ಚಕ್ರವಾಕದ
ತವಕ ತಗ್ಗಿತು ತರಣಿಯುಡರಿದನುದಯಪರ್ವತವ ೬

ವಿಮಳ ದರ್ಭಾಂಕುರದ ಶಯನದೊ
ಳಮರಪತಿಸುತ ಪವಡಿಸಿದನನು
ಪಮ ವಿಳಾಸನು ಕನಸ ಕಂಡೆನೆನುತ್ತ ಕಂದೆರೆದ
ಸಮರವಿಜಯಕೆ ಶಿವನ ಕೃಪೆ ಸಂ
ಕ್ರಮಿಸಿತೆನಗೆನುತಿರಲು ಮುಂದಣ
ಕಮಲನಾಭನ ಕಂಡು ಬಿನ್ನಹ ಮಾಡಿದನು ನಗುತ ೭

ದೇವ ನಿಮ್ಮಡಿ ಸಹಿತ ಕಂಡೆನು
ದೇವದೇವನ ಚರಣವನು ಸಂ
ಭಾವಿಸಿದ ನಮ್ಮಿಬ್ಬರನು ದಕ್ಷಾಧ್ವರಧ್ವಂಸಿ
ನಾವು ಬಂದುದನರಿದು ವರ ರಾ
ಜೀವಸರಸಿಗೆ ಕಳುಹಿದನು ಗಾಂ
ಡೀವ ನಿಜಚಾಪವನು ಕಂಡೆನು ಕೊಳನ ಮಧ್ಯದಲಿ ೮

ಬಳಿಕ ತಿರುವಿಟ್ಟಾಗಲಸ್ತ್ರವ
ಸೆಳೆದು ಬಿಲುವಿದ್ಯಾಚಮತ್ಕೃತಿ
ಯಳವ ತೋರಿದಡಾಗಳೀಶನ ಹೊರೆಗೆ ನಾನೈದಿ
ನಿಲೆ ತದೀಯಾಸ್ತ್ರಪ್ರಯೋಗದ
ಬಲುಹನೀಕ್ಷಿಸೆ ತೆಗೆವ ಬೆಡಗನು
ಕಲಿಸೆ ಪಾಶುಪತಾಸ್ತ್ರವೆನಗಾಯ್ತಲ್ಲಿ ವಶವರ್ತಿ ೯

ಕನಸನೀ ಹದನಾಗಿ ಕಂಡೆನು
ದನುಜಹರ ಬೆಸಸಿದರ ಫಲವನು
ನನಗೆನಲು ನಸುನಗುತ ನುಡಿದನು ದಾನವಧ್ವಂಸಿ
ನಿನಗೆ ಶೂಲಿಯ ಕರುಣವಾಯ್ತಿಂ
ದಿನಲಿ ಪಾಶುಪತಾಸ್ತ್ರ ನಿನ್ನದು
ದಿನದೊಳರಿ ಸೈಂಧವ ವಧವ್ಯಾಪಾರವಹುದೆಂದ ೧೦

ಉಲಿವ ಮಂಗಳಪಾಠಕರ ಕಳ
ಕಳದೊಳುಪ್ಪವಡಿಸಿದನವನಿಪ
ತಿಲಕ ಮಾಡಿದನಮಲ ಸಂಧ್ಯಾವಂದನಾದಿಗಳ
ನಳಿನನಾಭನ ಪಾದಪದ್ಮವ
ನೊಲವಿನಿಂದಭಿನಮಿಸಿ ಸುಭಟಾ
ವಳಿಗೆ ನೇಮವ ಕೊಟ್ಟನಂತಕಸೂನು ಸಂಗರಕೆ ೧೧

ನಡೆದುದುರುಸನ್ನಾಹದಲಿ ಸೂ
ಳಡಸಿ ಮೊರೆವ ಗಭೀರ ಭೇರಿಯ
ಕಡುರವದ ರಿಪುಭಟರ ಬೈಗುಳ ಗೌರುಗಹಳೆಗಳ
ಎಡಬಲಕೆ ತನಿಹೊಳೆವ ತೇಜಿಯ
ಕಡುಮುದದ ಕರಿಘಟೆಯ ತೇರಿನ
ನಿಡುವರಿಯ ಕಾಲಾಳ ಕಳಕಳವಾಯ್ತು ರಣದೊಳಗೆ ೧೨

ಎದ್ದುದೀ ಕಟಕದಲಿ ಬಲ ಮಿಂ
ಡೆದ್ದು ಸುಭಟರು ಸಮರಭೂಮಿಯ
ಹೊದ್ದಿದರು ಝಳಪಿಸುವಡಾಯ್ದುದ ಹೊಗರ ಹೊಳಹುಗಳ
ಅದ್ದುದತಳಕೆ ಅವನಿಯೆನೆ ಹೊದ
ರೆದ್ದು ನಡೆದುದು ದಂತಿಘಟೆ ಬರು
ತಿದ್ದುದಗಣಿತ ರಥ ಪದಾತಿಗಳಾಹವಾಂಗಣಕೆ ೧೩

ವಿನುತ ಸಂಧ್ಯಾವಂದನಾದಿಯ
ನನುಕರಿಸಿ ಹರಿಪದ ಪಯೋಜವ
ನೆನೆದು ವಿರಚಿತ ದೇವವಿಪ್ರಾನಳ ಸಮಾರ್ಚನನು
ಕನಕ ಕವಚವ ತೊಟ್ಟು ಗಡ್ಡದ
ಘನತೆಯನು ಗಂಟಿಕ್ಕಿ ವರಕಾಂ
ಚನಮಯದ ಯಜ್ಞೋಪವೀತವನಿಳುಹಿದನು ದ್ರೋಣ ೧೪

ನಿರಿಯುಡಿಗೆಯಲಿ ಮಲ್ಲಗಂಟಿನ
ಸೆರಗ ಮೋಹಿಸಿ ಬೆರಳ ದರ್ಭೆಯ
ಹರಿದು ಬಿಸುಟನು ಜೋಡು ಸೀಸಕ ಬಾಹುರಕ್ಷೆಗಳ
ಮುರುಹಿ ಬಿಗಿದನು ನಿಖಿಳಭೂಸುರ
ರುರುವ ಮಂತ್ರಾಕ್ಷತೆಯ ಕೊಳುತ
ಳ್ಳಿರಿವ ಜಯರವದೊಡನೆ ರಥವೇರಿದನು ಕಲಿದ್ರೋಣ ೧೫

ಸೂಳವಿಸಿದವು ಸನ್ನೆಯಲಿ ನಿ
ಸ್ಸಾಳ ಕೋಟಿಗಳುರವಣಿಸಿ ಹೆ
ಗ್ಗಾಳೆಗಳು ಸಾರಿದವು ಸುಭಟರ ವೀರ ವಿತರಣವ
ಸಾಲು ಝಲ್ಲರಿಗಳ ಪತಾಕಾ
ಜಾಲ ಸಬಳದ ಹೊದರ ಗೋವಳಿ
ಗೋಲ ತೂಗಾಟದಲಿ ಸಮರಕೆ ದ್ರೋಣ ನಡೆತಂದ ೧೬

ನೆಗಹಿ ಬೀಸುವ ಚೌರಿಗಳ ಸ
ನ್ನೆಗೆ ಚತುರ್ಬಲವೆಲ್ಲ ದ್ರೋಣನ
ದೃಗುಪಥಕೆ ತೋರಿದರು ತಂತಮ್ಮಾಳು ಕುದುರೆಗಳ
ತೆಗೆದು ಯೋಜನವಾರರಲಿ ಕಾ
ಳೆಗಕೆ ಶಕಟವ್ಯೂಹವನು ಹೂ
ಣಿಗರ ಬಲಿದನು ಕೌರವೇಂದ್ರಾನುಜರ ಗಡಣದಲಿ ೧೭

ಇದಿರೆ ಶಕಟವ್ಯೂಹವದರ
ಗ್ರದಲಿ ದುಶ್ಶಾಸನನು ಕೆಲಬಲ
ದೊದವಿನಲಿ ಬಾಹ್ಲಿಕನು ಸೌಬಲ ಸಿಂಧು ಮಾಗಧರು
ಇದರ ಹಿಂದಣ ಮೈಯೊಳೈಗಾ
ವುದದ ನೀಳದೊಳೆರಡುವರೆ ಗಾ
ವುದದ ವಿಸ್ತಾರದಲಿ ಮಕರವ್ಯೂಹವನು ಬಲಿದ ೧೮

ಹಿಂದೆ ಯೋಜನವೈದರಳವಿಯೊ
ಳಂದು ಚಕ್ರವ್ಯೂಹವನು ನಲ
ವಿಂದ ಬಲಿದನು ನಿಲಿಸಿದನು ಕಾಂಭೋಜಭೂಪತಿಯ
ವಿಂದನನುವಿಂದನನು ದಕ್ಷಿಣ
ವೃಂದ ಸಮಸಪ್ತಕರ ಬಲವನು
ಸಂದಣಿಸಿದರು ಹತ್ತು ಸಾವಿರ ನೃಪರ ಗಡಣದಲಿ ೧೯

ತುರಗವರುವತ್ತಾರು ಕೋಟಿಯ
ನುರು ಮದೇಭವನೆಂಟು ಲಕ್ಷವ
ವರ ರಥವನರುವತ್ತು ಸಾವಿರವನು ಸಗಾಢದಲಿ
ಧುರದ ಕಾಲಾಳಗಣಿತವ ಮೋ
ಹರಿಸಿ ಹಂಸವ್ಯೂಹವನು ಸಡ
ಗರಿಸಿದನು ನಿಯುತಾಯು ಮೊದಲಾದವರ ಕಾಹಿನಲಿ ೨೦

ಕೆಲಬಲದ ಸಬಳಿಗರು ಸಬಳದ
ವಳಯದಲಿ ಹರಿಗೆಗಳು ಹರಿಗೆಗ
ಳೊಳಗೆ ಬಿಲ್ಲಾಳುಗಳ ಮರೆಯಲಿ ವಾಜಿ ಗಜ ರಥವ
ನಿಲಿಸಿ ಗರ್ಭವ್ಯೂಹವನು ಮಂ
ಡಳಿಸಿದನು ಸಂವೀರರನು ಸಿಂ
ಹಳರ ನಿಲಿಸಿದ ಹತ್ತು ಸಾವಿರ ಮಂಡಳೇಶ್ವರರ ೨೧

ಅಪರಭಾಗದಲಳವಿಯಲಿ ಭೂ
ಮಿಪರ ಭೂರಿಶ್ರವನ ಶಲ್ಯನ
ಕೃಪನ ವೃಷಸೇನನ ಸುಲೋಚನ ದೀರ್ಘಬಾಹುಕರ
ನೃಪತಿಗಳನೆಂಬತ್ತು ಸಾವಿರ
ಚಪಳಗಜ ಹದಿನೆಂಟು ಕೋಟಿಯ
ನಪರಿಮಿತ ತೇಜಿಯಲಿ ಪದ್ಮವ್ಯೂಹವನು ಬಲಿದ ೨೨

ಆ ಮಹಾಮೋಹರದ ಬಳಿಯಲಿ
ಸೋಮದತ್ತನ ದಂಡಧರನನು
ತಾಮರಸಬಂಧುವಿನ ಮಗನನು ಕ್ಷೇಮಧೂರ್ತಕನ
ಆ ಮಹಾಬಾಹುಕನನಶ್ವ
ತ್ಥಾಮನನು ಕೃತವರ್ಮಕರೆನಿಪ ಸ
ನಾಮರನು ನಿಲಿಸಿದನು ಸೂಚೀವ್ಯೂಹ ವಳಯದಲಿ ೨೩

ಪದುಮ ಸೂಚೀವ್ಯೂಹ ಮಧ್ಯದೊ
ಳದಟರನು ನಿಲಿಸಿದನು ಸಮರಾ
ಗ್ರದಲಿ ಅವನಳಲಿಗರನಾಪ್ತರನವನ ಬಾಂಧವರ
ಕದನಗಲಿ ಸೈಂಧವನನಾ ಮ
ಧ್ಯದಲಿ ನಿಲಿಸಿದನಮಮ ಸಮರಕೆ
ಮದನ ಮಥನನು ಮೊಗಸಲಸದಳವೆನಿಸಿ ರಂಜಿಸಿತು ೨೪

ತಿವಿವ ಸಿಡಿಲೊಬ್ಬುಳಿಯೊ ಪ್ರಳಯದ
ಜವನ ನೆರವಿಯೊ ಕಾಳಕೂಟಾ
ರ್ಣವದ ಸೀಮಾಲಂಘನವೊ ಮೃತ್ಯುವಿನ ಪಾಳಯವೊ
ಅವನಿ ಕುಸಿದುದು ನೆರೆದ ಸೇನೆಯ
ಹವಣಿಗೀಶ್ವರ ಬಲ್ಲನೆನೆ ಸೈಂ
ಧವನ ಕಾಹಿನ ಮೋಹರಂಗಳು ಕಿಡಿಯನುಗುಳಿದವು ೨೫

ಜಡಿವ ಮದದಾನೆಗಳ ಗಗನವ
ನಡರ್ವ ಕಡುಗುದುರೆಗಳ ಸೂಠಿಯೊ
ಳೆಡಬಲಕೆ ಬಿರುವರಿವ ತೇರಿನ ಸೂತರೋಜೆಗಳ
ಖಡುಗ ಕೊಂತವ ನಭಕೆ ಹಾಯಿಕಿ
ಹಿಡಿವ ಸಂಭಟರ ಭುಜದ ಹೊಯ್ಲಿನ
ಕಡುಮನದ ರಣದವಕಿಗರ ಸೌರಂಭ ರಂಜಿಸಿತು ೨೬

ಮೊಳಗಿದವು ನಿಸ್ಸಾಳ ಕೋಳಾ
ಹಳಿಸಿದವು ಕಹಳೆಗಳು ಪರ್ವತ
ಹಿಳಿಯೆ ಹೆಚ್ಚಿದ ಪಟಹ ಪಣಹ ಮೃದಂಗ ಡಿಂಡಿಮದ
ಉಲಿಯು ತೇಜಿಯ ಹೇಷಿತದ ವೆ
ಗ್ಗಳೆಯು ಕರಿಗಳ ಬೃಂಹಿತದ ಗೊಂ
ದಳದ ಕಳಗರ್ಜಾಯ್ತು ಕೌರವ ಸೈನ್ಯಶರಧಿಯಲಿ ೨೭

ಮುಂದೆ ಶಕಟವ್ಯೂಹದಲಿ ನಡೆ
ತಂದು ನಿಂದನು ದ್ರೋಣ ನಿಜಬಲ
ದಂದವನು ನೆರೆನೋಡಿ ನೋಡಿ ಕಿರೀಟವನು ತೂಗಿ
ಇಂದು ಗೆಲಿದರೆ ಧರ್ಮಸುತನವ
ರಿಂದುಕುಲದಗ್ಗಳರು ಬರಹೇ
ಳೆಂದು ಭಟ್ಟರನಟ್ಟಿದನು ಪಾಂಡವರ ಪಾಳಯಕೆ ೨೮

ಕೇಳು ಧೃತರಾಷ್ಟ್ರಾವನಿಪ ಸಿರಿ
ಲೋಲ ಸಹಿತ ಯುಧಿಷ್ಠಿರಾದಿಗ
ಳಾಳವೇಳಾಪದಲಿ ಹೊಕ್ಕರು ಕಾಳೆಗದ ಕಳನ
ಸಾಲರಿದು ನಿಜಸೇನೆಯನು ಪಾಂ
ಚಾಲಸುತ ಮೋಹರಿಸಿದನು ಕೆಂ
ಧೂಳಿ ಮಾಣಿಸಿತನಿಮಿಷತ್ವವನಮರ ಸಂತತಿಯ ೨೯

ಅರಸನೆಡವಂಕದಲಿ ಮತ್ಸ್ಯರು
ಬಿರುದ ಕೈಕೆಯ ಚೈದ್ಯ ಕೇರಳ
ಮರು ಯವನ ಸೌವೀರ ಕೌಸಲ ಪಾಂಡ್ಯ ಮಾಗಧರು
ಧರಣಿಪನ ಬಲವಂಕದಲಿ ಮೋ
ಹರಿಸಿ ಪಾಂಚಾಲಕರು ಚೂಣಿಯೊ
ಳುರವಣಿಸಿದರು ನಕುಲ ಸಾತ್ಯಕಿ ಭೀಮನಂದನರು ೩೦

ನರ ಮುರಾಂತಕರೊಂದು ಕಡೆಯಲಿ
ಮುರಿಯೆ ಕಂಡನು ನೃಪತಿ ಕೃಷ್ಣನ
ಹೊರೆಗೆ ಬಂದನು ನಮಿಸಿ ಬಿನ್ನಹ ಮಾಡಿದನು ಬಳಿಕ
ನರನಿವನು ಮಗನಿದಿರುಗಾಣದೆ
ಹಿರಿದನೇರಿಸಿ ನುಡಿದನಿದ ಪತಿ
ಕರಿಸಬೇಹುದು ನಿನ್ನ ಕರುಣವೆ ಹರಣವೆಮಗೆಂದ ೩೧

ಹಗೆಯು ತಲೆ ಹೋಗದಡೆ ವಹ್ನಿಯ
ಹೊಗುವ ನುಡಿ ತಮ್ಮನದು ಬಳಿಕಾ
ಸೆಗಳಿಕೆಯೊಳುಳಿದೆಮ್ಮ ನಾಲ್ವರ ದೇಹ ನಿಕ್ಷೇಪ
ಬಗೆಯಲೈವರ ಜೀವನದ ವಿಲ
ಗಿಗನು ನೀನೆಂದರಸ ಕರುಣಾ
ಳುಗಳ ದೇವನ ಬೇಡಿಕೊಂಡನು ಕೇಳು ಧೃತರಾಷ್ಟ್ರ ೩೨

ಪಡೆಗಡಲು ಕುಡಿನೀರು ನೆರೆ ನೀ
ರಡಸಿದುದು ಪಾರ್ಥನ ಶರಾವಳಿ
ವಡಬನಿದರೊಳು ಕೆಲಬಲದ ಹಂಗೇಕೆ ಕದನದಲಿ
ಕಡುಹಿನಲಿ ಸೈಂಧವನ ತಲೆಯನು
ಹೊಡೆದು ನಿನ್ನಯ ಕಾಲ ಬಳಿಯಲಿ
ಕೆಡಹುವನು ನಿಮಿಷದಲಿ ಫಲುಗುಣನೆಂದನಸುರಾರಿ ೩೩

ಕರೆದು ಸಾತ್ಯಕಿ ಭೀಮನನು ನೃಪ
ವರನ ಸುಯ್ದಾನದಲಿ ನಿಲಿಸಿದ
ನರಿಬಲಕೆ ನೂಕಿದನು ಕೈಕೆಯ ಚೈದ್ಯ ಸೃಂಜಯರ
ಮುರಮಥನನೊಡಗೂಡಿ ನಿಜ ಮೋ
ಹರವನಂದೈನೂರು ಬಿಲ್ಲಂ
ತರಕೆ ತೊಲಗಿ ಮಹಾಸ್ತ್ರಮಂತ್ರವ ಜಪಿಸಿದನು ಪಾರ್ಥ ೩೪

ಇಳಿದು ರಥವನು ಮುರಹರನ ಪದ
ತಳದ ಧೂಳಿಯ ಕೊಂಡನತಿ ನಿ
ರ್ಮಲ ಸಮಾಧಾನದಲಿ ಕೃಷ್ಣನ ಚರಣಕೆರಗಿದನು
ತಲೆಯ ಹಿಡಿದೆತ್ತಿದನು ಹರಿ ಕೋ
ಮಳ ಕರಾಂಬುಜದಿಂದ ಪಾರ್ಥನ
ನೊಲಿದು ಮೈದಡವಿದನು ಗೆಲು ಹೋಗೆಂದು ಹರಸಿದನು ೩೫

ಖುರಕೆ ರತುನವ ಸುರಿದು ತೇರಿನ
ತುರಗವನು ವಂದಿಸಿದನಾ ಪಳ
ಹರದ ಹನುಮಂಗೆರಗಿದನು ಸುರಕುಲಕೆ ಕೈಮುಗಿದು
ವರರಥವ ಬಲಗೊಂಡು ಕವಚವ
ಬರಿಗೆ ಬಿಗಿದನು ಕೈಗೆ ವಜ್ರದ
ತಿರುವೊಡೆಯನವಚಿದನು ರಥವೇರಿದನು ಕಲಿಪಾರ್ಥ ೩೬

ದೇವದತ್ತವ ಮೊಳಗಿದನು ಗಾಂ
ಡೀವಿ ಚಾಪವ ಮಿಡಿದ ನಿಷ್ಠುರ
ರಾವ ತಿವಿದುದು ಜರಿದವಡಕಿಲು ಜಗದ ಜೋಡಿಗಳ
ರಾವು ಫಲುಗುಣಯೆನುತ ಪಾರ್ಥನ
ಭಾವ ಕುಡಿ ಚಮ್ಮಟಿಗೆಯಲಿ ತುರ
ಗಾವಳಿಯನದುಹಿದನು ಸುಳಿಸಿದನಾಹವಕೆ ರಥವ ೩೭

ವರ ಯುಧಾಮನ್ಯೂತ್ತಮೌಂಜಸ
ರೆರಡು ಕಡೆಯಲಿ ಬರೆ ಮುರಾರಿಯ
ಪರಮ ಸಾಹಾಯ್ಯದಲಿ ಸಾಹಸಮಲ್ಲನುರವಣಿಸೆ
ಅರಿಬಲವ ಕೆಣಕಿದನು ಪಾರ್ಥನ
ಬರವನೀಕ್ಷಿಸಿ ತನ್ನ ಸೇನೆಗೆ
ಬೆರಳ ಚೌರಿಯ ಬೀಸಿ ದುಶ್ಶಾಸನನು ಮಾರಾಂತ ೩೮

ಇವನ ಕೊಂದರೆ ಮುನ್ನ ಮಾಡಿದ
ಪವನತನಯನ ಭಾಷೆಗೂಣೆಯ
ವಿವನ ಕೊಲ್ಲದೆ ಗೆಲುವ ಹದನೇನೆನುತ ನಿಮಿಷದಲಿ
ಕವಲುಗೋಲಿನಲರಿಭಟನ ಚಾ
ಪವನು ಸೂತನ ರಥವ ರಥವಾ
ಹವನು ಖಂಡಿಸಿ ಬಿಸುಡಲವ ಜಾರಿದನು ದುಗುಡದಲಿ ೩೯

ಉರಿಯ ಬಂದಿಯ ಹಿಡಿದು ಹೆಚ್ಚುವ
ದೊರೆಯಲೇ ದಿಟ ಪಾದರಸವೆಲೆ
ಯರಸ ನಿನ್ನ ಕುಮಾರನೇಸರ ಪಾಡು ಪಾರ್ಥಂಗೆ
ತೆರಳಿದನು ನಿನ್ನಾತ ಸೂಠಿಯೊ
ಳುರವಣಿಸಿತಾ ತೇರು ನರನೈ
ತರಲು ಕಂಡನು ಶಸ್ತ್ರವಿದ್ಯಾ ಭಾಳಲೋಚನನ ೪೦

ಅರುಣಮಯ ರಥವಾಜಿಗಳ ವಿ
ಸ್ತರದ ಹೇಮದ ಕಳಶ ಸಿಂಧದ
ಸರಳು ತೀವಿದ ಬಂಡಿ ಬಳಿಯಲಿ ಲಕ್ಷ ಸಂಖ್ಯೆಗಳ
ತರಣಿಯನು ಸೋಲಿಸುವ ರತ್ನಾ
ಭರಣಕಾಂತಿಯ ರಾಯಕಟಕದ
ಗುರುವ ಕಂಡನು ಪಾರ್ಥ ಶಕಟ ವ್ಯೂಹದಗ್ರದಲಿ ೪೧

ಆರಿವನು ಕಲಿಪಾರ್ಥನೇ ತ್ರಿಪು
ರಾರಿ ಹಿಡಿವಂಬಾಯಿತೆಂಬ ದೊ
ಠಾರನೇ ದೈತ್ಯಾರಿ ಸಾರಥಿಯೆಂಬ ಗರ್ವಿತನೆ
ಹಾರುವರು ನಾವಸ್ತ್ರ ವಿದ್ಯಾ
ಪಾರಗರು ನಾವಲ್ಲ ರಣದೌ
ದಾರಿಯವ ತೋರೆಮಗೆನುತ್ತಡಹಾಯ್ದನಾ ದ್ರೋಣ ೪೨

ನಾಳೆ ಹಗೆವನ ಹೊಯ್ವೆನೆಂಬು
ಬ್ಬಾಳುತನವಿನ್ನೊಮ್ಮೆ ಭೂಪತಿ
ಯೋಲೆಗಾತಿಯರಿದಿರಲಾಡಿದ ಭಾಷೆಯಿನ್ನೊಮ್ಮೆ
ಆಳು ನೆರೆದಿದೆ ಚೂಣಿಯೊಳಗೊಂ
ದಾಳ ಹೊಯ್ದರೆ ಗೆಲವು ನಿನ್ನದು
ಕಾಳಕೂಟದ ಕಮಲ ತುಂಬಿಗೆ ಪಥ್ಯವಲ್ಲೆಂದ ೪೩

ಎಂಬಡಿದಿರುತ್ತರವಲೇ ಗರ
ಳಾಂಬುಜದ ಪರಿಮಳಕೆ ಗರುಡನು
ತುಂಬಿಯಾದರೆ ಸೇರುವುದಲೇ ಸಾಕದಂತಿರಲಿ
ಅಂಬುಗಳಿಗೆಡೆದೆರಹ ಕುಡಿ ನೀ
ವೆಂಬ ನುಡಿಗಂಜುವೆನು ಸೈಂಧವ
ನೆಂಬವನ ತೋರಿಸಿರೆಯೆಂದನು ನಗುತ ಕಲಿಪಾರ್ಥ ೪೪

ಎಲೆ ಮರುಳೆ ಮುಂದಿದ್ದ ನಮ್ಮಯ
ವಿಲಗವನು ಪರಿಹರಿಸಿ ಸೈಂಧವ
ನಳಿವುಪಾಯವ ಮಾಡು ಗರುವರು ನುಡಿದು ಕೆಡಿಸುವರೆ
ಅಳವಿಗೊಡು ಕೊಳ್ಳೆಂಬನೆನುತ
ಗ್ಗಳಿಯನೆಚ್ಚನು ನರನ ಮೆಯ್ಯಲಿ
ತಳಿತವಂಬುಗಳೇನನೆಂಬೆನು ವಿಗಡ ವಿಗ್ರಹವ ೪೫

ಅವರ ಪಾದಾಂಬುಜಕೆ ಫಲುಗುಣ
ಕವಿಸಿದನು ಸರಳುಗಳ ಲೆಕ್ಕಿಸ
ದವಗಡಿಸಿ ಗುರುವೆಚ್ಚು ಕಡಿದನು ಗಾಂಡಿವದ ತಿರುವ
ಸವತಳಿಸಿ ಮಾರ್ತಿರುವಿನಲಿ ಸಂ
ತವಿಸಿಕೊಂಡರ್ಜುನನು ದ್ರೋಣನ
ನವ ನಿಶಿತ ಬಾಣೌಘದಲಿ ಹೂಳಿದನು ನಿಮಿಷದಲಿ ೪೬

ಸರಳ ಸವರಿ ಮಹಾಸ್ತ್ರಚಯದಲಿ
ನರನನೆಚ್ಚನು ನಮ್ಮ ಲಾಗಿನ
ಧುರವು ತಾನಿದು ದಿಟ್ಟನಹೆಯೋ ಪಾರ್ಥ ಲೇಸೆನುತ
ಸರಳು ಸುರಿಯಲು ಕೃಷ್ಣ ಪಾರ್ಥನ
ಕೆರಳಿದನು ಫಡ ಮರುಳೆ ಗುಣದಲಿ
ಗುರುವ ಗೆಲುವುದ ಮಾಡು ಗೆಲುವಾ ಕಾದಿ ನೀನೆಂದ ೪೭

ಇಳುಹಿದನು ಗಾಂಡಿವವನುರು ಬ
ತ್ತಳಿಕೆಯನು ಕಳಚಿದನು ರಥದಿಂ
ದಿಳಿದು ಮೈಯಿಕ್ಕಿದನು ದ್ರೋಣನ ಚರಣಕಮಲದಲಿ
ತಿಳಿಯಲೆಮ್ಮವರಿಗೆ ಜೀವನ
ದುಳಿವು ನಿನ್ನದು ನಿನ್ನ ಮಕ್ಕಳ
ಸಲಹು ಮೇಣ್ ಕೊಲ್ಲೆನುತ ನುಡಿದನು ವಿನಯದಲಿ ಪಾರ್ಥ ೪೮

ಆ ಶಿಶುತ್ವದಲೆಮ್ಮ ಬೊಪ್ಪನು
ವಾಸವನ ಪುರಕೈದಿದನು ನಿ
ಮ್ಮಾಸೆಯಲಿ ಗಾಂಗೇಯರಿಂದವೆ ಹಿರಿದು ಬದುಕಿದೆವು
ಘಾಸಿಯಾದೆವು ಜೂಜಿನಲಿ ವನ
ವಾಸವನು ನೂಕಿದೆವು ಮೈಮರೆ
ದೀಸನೇರಿಸಿ ನುಡಿದ ನುಡಿಗಳ ಕಾಯಬೇಕೆಂದ ೪೯

ನೀವು ಹೂಣೆಗರಾಗಿ ರಿಪುವನು
ಕಾವಡಿತ್ತಲೆ ತೊಲಗುವೆನು ಕರು
ಣಾವಲೋಕನವೆನ್ನ ಮೇಲುಂಟಾದಡಿದಿರಹೆನು
ಆವುದನು ನಮಗೇನು ಗತಿ ತಲೆ
ಗಾವ ಮತವೇ ನಿಮ್ಮ ಚಿತ್ತದೊ
ಳಾವ ಹದನೆನೆ ಮುಗುಳುನಗೆಯಲಿ ದ್ರೋಣನಿಂತೆಂದ ೫೦

ಕಂದನಶ್ವತ್ಥಾಮ ಹುಸಿಯೆನ
ಗಿಂದು ಬೇಹ ಕುಮಾರ ನೀ ನಿ
ನ್ನಿಂದ ತನ್ನಯ ಕೀರ್ತಿ ಮೆರೆವುದು ಮೂರುಲೋಕದಲಿ
ತಂದೆ ನಿನಗಾ ಮುನಿಯಲಾಪೆನೆ
ಸಂದುದಾಡಿದ ಭಾಷೆ ನೀ ಹೋ
ಗೆಂದು ಗುಣದಲಿ ಬೀಳುಕೊಟ್ಟನು ದ್ರೋಣನರ್ಜುನನ ೫೧

ಬಲದೊಳಧಿಕರು ಭಟರೊಳತಿ ವೆ
ಗ್ಗಳರು ಹೆಸರುಳ್ಳವರು ವಿದ್ಯಾ
ಕುಲ ತಪೋಧರ್ಮಾದಿ ಗುಣಿಗಳು ಧೈರ್ಯಸಂಯುತರು
ಹಲಬರಿಹುದುಸುರಿಲ್ಲದೊಡಲಿನ
ಚೆಲುವಿನಂತಿರೆ ನಮ್ಮ ಬಲ ಹರಿ
ಯೊಲವಿನವರಭ್ಯುದಯವನು ಧೃತರಾಷ್ಟ್ರ ಕೇಳೆಂದ ೫೨

ಹತ್ತನೆಯ ಸಂಧಿ

ಸೂ. ನಡೆದು ಪರಬಲ ಮಧ್ಯದಲಿ ನೀ
ರ್ಗುಡಿಸಿ ಹರಿಯನು ಸಕಲ ಸುಭಟರ
ಮಡಹಿ ಫಲುಗುಣ ಗೆಲಿದನಗ್ಗದ ಕೌರವೇಶ್ವರನ

ನರನು ಕಳುಹಿಸಿಕೊಳಲು ಗುರುವೋ
ಹರವನಪಸವ್ಯದಲಿ ವಂಚಿಸಿ
ಮುರುಹಿದನು ಮುರವೈರಿ ರಥವನು ಮುಂದಣೊಡ್ಡಿಂಗೆ
ಅರರೆ ನರನೋ ನೂಕು ನೂಕರಿ
ಬಿರುದರಾವಡೆ ಪೂತು ಮಝ ಎಂ
ದುರವಣಿಸಿದರು ಮುರಿದು ಮಕರವ್ಯೂಹದತಿರಥರು ೧

ನೂಕಿತರಿಚತುರಂಗಬಲ ನೆಲ
ನೋಕರಿಸಿತೋ ಪ್ರಳಯ ಜಲಧಿಯ
ನೂಕುತೆರೆಗಳ ಲಹರಿಯೋ ನಿಲುವಾತನಾರಿದಕೆ
ನಾಕು ಕಡೆಯಲಿ ಕವಿದುದಳವಿಗೆ
ನೂಕುನೂಕಾಯಿತ್ತು ನರನ
ವ್ಯಾಕುಳತೆಯಲಿ ಸವರ ತೊಡಗಿದನಹಿತ ಬಲ ವನವ ೨

ಕುಸುರಿದರಿದವು ಜೋಡು ವಜ್ರದ
ರಸುಮೆಗಳು ಹಾರಿದವು ರಿಪುಗಳ
ಯೆಸೆವ ಸೀಸಕ ಕವಚವನು ಸೀಳಿದನು ತೋಳಿನಲಿ
ನೊಸಲ ಸೀಸಕ ನುಗ್ಗುನುಸಿ ಬಂ
ಧಿಸಿದ ಸರಪಣಿ ಹಿಳಿದವರಿಬಲ
ದೆಸಕ ನಿಂದುದು ಪಾರ್ಥನೆಚ್ಚನು ವೈರಿಮೋಹರವ ೩

ಕುಳುವೆಳಗು ಕಿಡಿಗೆದರೆ ಹೊಗರಿನ
ಹೊಳಹು ಗಗನವನುಗುಳೆ ಧಾರೆಯ
ಬಲುಗಿಡಿಗಳುರಿ ಮಸಗೆ ತಳಿಹದ ಬಣ್ಣ ಗಜಗಜಿಸೆ
ಹಿಳುಕು ಬೊಬ್ಬಿಡೆ ಹೊದರಡಸಿ ಕಣ
ಗಿಲೆಯ ಕೋಲುಳಿಯಂಬು ಕವಲಂ
ಬಲಗಿನಂಬೀಸಾಡಿದವು ಪರಸೈನ್ಯ ಸಾಗರವ ೪

ವ್ರಣದ ಬಲುವೊನಲೊಳಗೆ ತಲೆಗಳು
ಕುಣಿದವರ್ಜುನನಂಬಿನುರುಬೆಗೆ
ಹೆಣನ ದಾವಣಿ ಹಾಸಿದವು ಸೂಸಿದವು ದೊಂಡೆಗಳು
ತಣಿದನಂತಕನಟ್ಟೆಗಳ ರಿಂ
ಗಣದ ನಾಟಕದೊಳಗೆ ಸಮರಾಂ
ಗಣದ ರೌರವ ರೌದ್ರವಾಯಿತು ಕಳನ ಚೌಕದಲಿ ೫

ಏರುಗಳು ಬುದುಬುದಿಸಿ ರಕುತವ
ಕಾರಿ ಕಾಳಿಜ ಖಂಡ ನೆಣ ಜಿಗಿ
ದೋರಿ ಬೆಳುನೊರೆ ಮಸಗಿ ನಸುಬಿಸಿರಕುತ ಹೊನಲಿಡಲು
ಕೌರಿಡಲು ಕಡಿದುಡಿದವೆಲು ಮೊಗ
ದೋರುಗಳ ಪೂರಾಯ ಘಾಯದ
ತಾರುಥಟ್ಟಿನ ಹೆಣನ ಮೆದೆ ಹೇರಾಳ ರಂಜಿಸಿತು ೬

ಎಲೆಲೆ ಪ್ರಳಯದ ರುದ್ರನನು ತಲೆ
ಬಳಿಚಿಬಿಟ್ಟನು ದ್ರೋಣನಕಟಾ
ನೆಲನೊಡೆಯನಾಪ್ತಿಗರು ಬಗೆದರು ಸ್ವಾಮಿದ್ರೋಹಿಕೆಯ
ಕೊಲುವವನು ಫಲುಗುಣನೊ ದ್ರೋಣನೊ
ಕೊಲೆಗಡಿಗನೋ ಕೊಂದನೋ ಕುರು
ಕುಲತಿಲಕ ನೆರೆ ಪಾಪಿಯೆಂದರು ನಿಖಿಳ ಪರಿವಾರ ೭

ಈತನರ್ಜುನನಿತ್ತಲಿದೆ ಪುರು
ಹೂತಸುತನ ವರೂಥವಿದೆ ಕಪಿ
ಕೇತನನ ಬೊಬ್ಬಾಟವಿದೆ ಫಲುಗುಣನ ಶರಜಾಲ
ಈತ ಪಾರ್ಥನು ಹೊಕ್ಕನಿತ್ತಲು
ಶ್ವೇತಹಯನಿತ್ತಲು ಧನಂಜಯ
ನೀತನೆನೆ ಫಲುಗುಣನ ಮಯವಾಯ್ತಖಿಳ ತಳತಂತ್ರ ೮

ಇದೆ ಕಿರೀಟಿಯ ಬಿಲ್ಲ ಜೇವಡೆ
ಯದೆ ಸಿತಾಶ್ವನ ಸಿಂಹಗರ್ಜನೆ
ಯಿದೆ ಮುರಾರಿಯ ಮನಕೆ ಮುಂಚುವ ಹಯದ ಖುರನಿನದ
ಅದೆ ವಿಜಯನಸ್ತ್ರೌಘವತ್ತಲು
ಕದನ ಕಾಲಾನಲನ ತೀವ್ರತೆ
ಯದೆಯೆನುತ ಹೆದರೆದೆಯ ಸುಭಟರು ಬಿಸುಟರುತ್ಸಹವ ೯

ಉಡಿದು ಕುಪ್ಪಳಿಸಿದವು ರಥ ಕಡಿ
ವಡೆದುದಗ್ಗದ ಸಾರಥಿಗಳೆಡೆ
ಗೆಡೆದುದತಿರಥ ಸಮರಥಾರ್ಧ ಮಹಾರಥಾದಿಗಳು
ಹೊಡೆಗೆಡೆದ ದಂತಿಗಳು ರಕ್ತದ
ಕಡಲೊಳೀಸಾಡಿದವು ತೇಜಿಯ
ಕಡಿಕು ಹರಿದವು ಹೊರೆದನಂತಕನುರುಪರಿಗ್ರಹವ ೧೦

ಸರಳು ಸೇನೆಯ ತಾಗಿ ರಿಪುಗಳ
ಕೊರಳ ಕೊಯ್ಯದ ಮುನ್ನವರಿವೋ
ಹರವ ಹಿಂದಿಕ್ಕುವುದು ರಥವತಿಜವದ ಜೋಕೆಯಲಿ
ಹೊರಳಿದವು ಭಟರಟ್ಟೆ ಶೋಣಿತ
ಶರಧಿ ಮಸಗಿತು ಮಕುಟಬದ್ಧರ
ಹರಣದನಿಲಸಮೂಹ ಬೀಸಿತು ನಭಕೆ ಬಿರುಬಿನಲಿ ೧೧

ಮುರಿವಡೆದು ಚತುರಂಗವರ್ಜುನ
ನುರುಬೆಗಾರದೆ ನಿಲೆ ಶ್ರುತಾಯುಧ
ನಿರಿಯಲುತ್ಸಾಹಿಸಿದನಿದಿರಾದನು ಧನಂಜಯನ
ಮುರಿಯೆನುತ ಮುಂಕೊಂಡು ಪಾರ್ಥನ
ತರುಬಿದರು ಬಳಿಕೀತನಾತನ
ನೆರೆವಣಿಗೆ ಲೇಸೆನುತ ತುಳುಕಿದನಂಬಿನಂಬುಧಿಯ ೧೨

ನರನ ಬಾಣಾನೀಕವನು ಕ
ಕತ್ತರಿಸಿದನು ನಿಜಗದೆಯಲಾತನ
ಧುರಚಮತ್ಕಾರವನು ನೋಡುತ ಪಾರ್ಥ ಬೆರಗಾಗೆ
ಕೆರಳಿ ವಾಘೆಯ ಕೊಂಡು ರಥವನು
ಧುರಕೆ ದುವ್ವಾಳಿಸಲು ಮುರಹರ
ನುರವಣೆಗೆ ಕನಲುತ ಶ್ರುತಾಯುಧ ಹೊಯ್ವನಚ್ಯುತನ ೧೩

ವರುಣನಿತ್ತುಪದೇಶ ಬರಿದಿ
ದ್ದರನು ಹೊಯ್ದರೆ ತನ್ನ ಕೊಲುವುದು
ನಿರುತವೆನಲದ ಮರೆದು ಹೊಯ್ದನು ಹರಿಯ ಮಸ್ತಕವ
ಕೆರಳಿ ಗದೆ ಮುರಹರನ ಮುಟ್ಟದೆ
ಮರಳಿ ತನ್ನನೆ ಕೊಂದುದೇನ
ಚ್ಚರಿಯೊ ದೈವದ್ರೋಹಿಗೆತ್ತಣ ಲೇಸು ಬಹುದೆಂದ ೧೪

ಆ ಶ್ರುತಾಯುಧ ಮಡಿದನಲ್ಲಿ ಮ
ಹಾಸುರದ ರಣವಾಯ್ತು ಕಾಂಭೋ
ಜೇಶ ಕೈದುಡುಕಿದನು ಕದನವನಿಂದ್ರಸುತನೊಡನೆ
ಸೂಸಿದನು ಸರಳುಗಳನಾತನ
ಸಾಸವನು ಮನ್ನಿಸುತ ಫಲುಗುಣ
ಬೇಸರದೆ ಕೊಂಡಾಡಿ ಕಾದಿದನೊಂದು ನಿಮಿಷದಲಿ ೧೫

ಸರಳು ಸವೆಯಲು ಶಕ್ತಿಯಲಿ ಕಾ
ತರಿಸಿ ಕವಿದಿಡೆ ಶಕ್ತಿಯನು ಕ
ತ್ತರಿಸಿದನು ಕಾಂಭೋಜಭೂಪನ ಮುಕುಟ ಮಸ್ತಕವ
ಕೊರಳ ತೊಲಗಿಸಿ ಮುಂದೆ ನೂಕುವ
ವರ ಶ್ರುತಾಯುವಿನೊಡನೆ ಘನಸಂ
ಗರಕೆ ತೆಗೆದನು ಕಳುಹಿದನು ಕಾಂಭೋಜನೊಡನವರ ೧೬

ಹರಿಬದಯುತಾಯುವನು ಮಂಗುಳಿ
ಬ್ಬರು ಸುತರು ನಿಯುತಾಯು ಘನಸಂ
ಗರದ ದೀರ್ಘಾಯುವನು ಕಳುಹಿದನಮರಮಂದಿರಕೆ
ಧುರಕೆ ನೂಕಿದವಂಗರಾಜನ
ಕರಿಘಟೆಗಳಂಬಟ್ಟ ಮೊದಲಾ
ದರಿ ಸುಭಟ ಸಂದೋಹ ಮುತ್ತಿತು ಮತ್ತೆ ಫಲುಗುಣನ ೧೭

ಕರಿಘಟೆಯನಂಬಟ್ಟಭೂಪನ
ಶಿರವನೆಚ್ಚನು ಪಾರಸೀಕರ
ತುರಗ ಕವಿಯಲು ಕುಸುರಿದರಿದನು ಕೋಟಿಸಂಖ್ಯೆಗಳ
ಬಿರುದ ಹೊಗಳಿಸಿಕೊಂಡು ದಾತಾ
ರರ ಹಣವ ಸಲೆ ತಿಂದು ಹೆಚ್ಚಿದ
ಹಿರಿಯ ಡೊಳ್ಳಿನ ರಾವುತರ ಕೆಡಹಿದನು ನಿಮಿಷದಲಿ ೧೮

ಇರಿದು ಚಕ್ರವ್ಯೂಹವನು ಕುರಿ
ದರಿಯ ಮಾಡಿ ಕಿರೀಟಿಯುದರಿಂ
ಹೊರಗೆ ಹಂಸವ್ಯೂಹದಲಿ ಕೆಣಕಿದನು ಕಾಳೆಗವ
ತುರುಗಿದವು ತೂರಂಬು ತಲೆಗಳ
ತರಿದು ಬಿಸುಟವು ಘುಮ್ಮ ಘುಲಿಲೆನೆ
ನಿರಿನಿಳಿಲುಗರೆದೊರಲಿದವು ಫಲುಗುಣನ ಶರಜಾಲ ೧೯

ಬಿಲುರವದ ಮೊಳಗಿನಲಿ ಕೃಷ್ಣನ
ಫಲುಗುಣನ ಮೈಕಾಂತಿ ಮೇಘಾ
ವಳಿಗಳಲಿ ಹೊಂಗರಿಯ ಗಾಳಿಯ ಸರಳಸೋನೆಯಲಿ
ನಿಲುವ ಹಂಸವ್ಯೂಹವೆಲ್ಲಿಯ
ದೆಲೆ ಮಹೀಪತಿ ಕೇಳು ನಿನ್ನ
ಗ್ಗಳೆಯ ಸುಭಟರ ವಿಧಿಯನೆಂದನು ಸಂಜಯನು ನಗುತ ೨೦

ಅಳಿದುದೈನೂರರಸುಗಳು ಮು
ಮ್ಮಳಿತವಾಯ್ತೈವತ್ತು ಸಾವಿರ
ಬಲುಗುದುರೆ ನುಗ್ಗಾದುದೊಂಬೈನೂರು ಭದ್ರಗಜ
ಅಳಿದುದಕೆ ಕೊಲೆಕೊತ್ತುವಡೆದ
ಗ್ಗಳ ಪದಾತಿಗೆ ಗಣನೆಯೆಲ್ಲೀ
ಬಲದ ಮೈವಶವವರ ಕೈವಶವೇನು ಹೊಸತೆಂದ ೨೧

ಕೆಡಹಿದನು ವಿಂದಾನುವಿಂದರ
ನಡಗುದರಿಯಾಯ್ತಖಿಳಬಲದು
ಗ್ಗಡದ ವೀರರು ಕಾದಿ ಬಿದ್ದುದು ಕಾಯಮಾರಿಗಳು
ನಡುಹಗಲು ಪರಿಯಂತ ಕಾಳೆಗ
ಬಿಡದೆ ಬಲುಹಾಯ್ತಖಿಳ ವೇಗದ
ಕಡುಗುದುರೆ ಬಳಲಿದವು ಬಗೆಯದೆ ಹರಿಯ ಗರ್ಜನೆಯ ೨೨

ಭಾರಿಸಿತು ಮೈ ಮುಷ್ಟಿಯಲಿ ಲುಳಿ
ಸಾರತರ ಲಂಬಿಸಿತು ತಾಗಿದ
ಕೂರಲಗು ಗರಿದೋರಿದವು ನಿಜ ಹಯದ ಮೈಗಳಲಿ
ಹಾರಿದರ್ಜುನನರಿದನಾ ದೈ
ತ್ಯಾರಿಗೆಂದನು ದೇವ ಬಿನ್ನಹ
ವಾರುವಂಗಳ ವಹಿಲತೆಯ ಚಿತ್ತೈಸಿದಿರೆಯೆಂದ ೨೩

ಕಡಿಯಣವ ಕಾರಿದವು ಕಂದವ
ನಡಿಗಡಿಗೆ ಹಾಯ್ಕಿದವು ಸುತ್ತಿದ
ಕಂಡಿನೊರೆಯ ಕಟವಾಯ ಲೋಳೆಯ ನಿಮಿರ್ದ ಮೈಲುಳಿಯ
ತಡಿನೆನೆದ ಬಲುಬೆಮರ ಘುಡುಘುಡು
ಘುಡಿಪ ನಾಸಾಶ್ವಾಸ ಲಹರಿಯ
ಕಡುಮನದ ರಥತುರಗ ಮಿಕ್ಕವು ಸರಳಸೂಠಿಯಲಿ ೨೪

ಗಮನ ತಟ್ಟೆಯುವಾಯ್ತು ವೇಗ
ಭ್ರಮಣ ಜಡವಾಯ್ತಡಿಗಡಿಗೆ ನಿ
ಗ್ಗಮದೊಳಗೆ ರಥವದ್ದುದರಿ ಭಾರಣೆಯ ಭರವಸದ
ಸಮತೆ ನಿಂದುದು ಸಾಹಸೀಕರು
ಭ್ರಮಿಸುತಿದೆ ಭಟಜಲಧಿ ತುರಗ
ಶ್ರಮವ ನಾವ್ ಪರಿಹರಿಸಿದಲ್ಲದೆ ಕಾದಲರಿದೆಂದ ೨೫

ಉಂಟು ಹೊಲ್ಲೆಹವಲ್ಲ ರಣದೊಳ
ಗೆಂಟುಮಡಿ ಬಳಲಿದವು ತೇಜಿಗ
ಳೆಂಟುವರೆ ನೀರಿಲ್ಲ ಮುರಿದರೆ ಬೆನ್ನ ಬಿಡರಿವರು
ಗೆಂಟರಲಿ ನಮ್ಮೊಡ್ಡ ಸುತ್ತಲು
ವೆಂಟಣಿಸಿ ರಿಪುಸೇನೆಯಿದೆ ಏ
ನುಂಟು ಮಾಡುವುಪಾಯವೆಂದನು ನಗುತ ಮುರವೈರಿ ೨೬

ದೇವ ಕಾಳೆಗ ಬಲುಹು ಬಿಸಿಲಿನ
ಡಾವರಕೆ ರಥತುರಗವತಿ ನಿ
ರ್ಜೀವಿಯಾದವು ಹರಿಯ ಗಮನದ ಹದನನರಿಯೆನಲು
ಆ ವಿನೋದಿಗಳರಸ ಶರಣರ
ಕಾವ ಭರದಲಿ ದನುಜಕುಲ ವಿ
ದ್ರಾವಣನು ನಸುನಗುತ ಬೋಳೈಸಿದನು ತೇಜಿಗಳ ೨೭

ದೇವ ವಾಘೆಯ ಹಿಡಿ ತುರಂಗಕೆ
ಜೀವನವನೀ ಕಳನೊಳಗೆ ಸಂ
ಭಾವಿಸುವೆ ನೋಡೆನುತ ಧುಮ್ಮಿಕ್ಕಿದನು ಧಾರುಣಿಗೆ
ತೀವಿ ತೆಗೆದನು ವಜ್ರಶರದಲಿ
ಡಾವರಿಸಿದನು ಕಳನೊಳುದಕದ
ಸೈವಳೆಯ ಸೆಲೆಯರಿದು ಚೌಕಕೆ ಸೀಳಿದನು ನೆಲನ ೨೮

ನೋಡಿ ನರನುದ್ದಂಡತನವನು
ತೋಡುತೈದನೆ ತುರಗ ಲೀಲೆಗೆ
ಖೇಡಕುಳಿಯನು ಶೌರ್ಯಗರ್ವಿತನೈ ಶಿವಾ ಎನುತ
ಕೂಡೆ ಮುಸಗಿತು ರಿಪುಚತುರ್ಬಲ
ಜೋಡು ಮಾಡಿತು ಕಡಹದಮರರು
ಹೂಡಿದದ್ರಿಯನಂಬುಧಿಯ ತೆರೆಮಾಲೆ ಕವಿದಂತೆ ೨೯

ಒದರಿ ಮೇಲಿಕ್ಕಿದರು ನಿಸ್ಸಾ
ಳದ ನಿರಂತರ ಸೂಳುಮೊಳ್ಗಿನ
ಹೊದರುಗಳ ಹೊಸ ಮುಸೆಯಡಾಯ್ದುದ ಸಾಲ ಸಂದಣಿಯ
ಸದರವೀ ಹೊತ್ತೆನುತ ಗೆಲವಿನ
ಕುದುಕುಳಿಗಳುರವಣಿಸೆ ಕಾಣುತ
ಗದಗದಿಸಿ ಮುರವೈರಿ ಚಾಚಿದನರ್ಜುನಗೆ ರಥವ ೩೦

ಆಲಿಕಲುಗಳ ಕಡಿವಡುಕ್ಕಿನ
ಜೀಲಣದ ಹಂಗೇಕೆ ನಿಮ್ಮಡಿ
ಮೇಲುನೋಟವ ನೋಡೆ ರಥ ಪರಿಯುಂತ ಕಾಳೆಗವೆ
ಹೋಳುಗಳೆವೆನು ಹುಗ್ಗಿಗರನೆನು
ತಾಳೊಳಗೆ ಬೆರಸಿದನು ಬರಿಗಾ
ಲಾಳುತನದಲಿ ಕಾದಿ ಕೊಂದನು ಕೋಟಿ ರಿಪುಭಟರ ೩೧

ವರುಣ ಬಾಣದಲುಕವನು ತ
ತ್ಸರಸಿಯಲಿ ತುಂಬಿದನು ತಮಗವ
ಸರವಿದೆಂದೌಕುವ ಮಹೀಶರ ಮತ್ತೆ ಬರಿಕೈದು
ಕರಿ ರಥಾಶ್ವಪದಾತಿಯನು ಸಂ
ಗರದ ಮಧ್ಯದೊಳೊಬ್ಬನೇ ಸಂ
ಹರಿಸಿದನು ಶತಗುಣವನೊಂದೇ ಲೋಭ ಗೆಲುವಂತೆ ೩೨

ಕೊಳನ ತಡಿಯಲಿ ಹೂಡಿದನು ಶರ
ವಳಯದಲಿ ಚಪ್ಪರವನಾತನ
ಬಲುಹ ಕಂಡಸುರಾರಿ ಮೆಚ್ಚಿದನಡಿಗಡಿಗೆ ಹೊಗಳಿ
ಕಳಚಿ ನೊಗನನು ತೆಗೆದು ಕಬ್ಬಿಯ
ನಿಳುಹಿ ಪಡಿವಾಘೆಗಳ ಸರಿದನು
ಕೊಳಿಸಿ ಓಡಿಯಲು ಪಾಡಿಗೈದವು ಮರಳಿದೆಡಬಲಕೆ ೩೩

ಮುರುಹಿ ನಿಂದವು ಕೊಡಹಿದವು ಕೇ
ಸರವನಧ್ವಶ್ರಮದ ಥಗೆ ಪರಿ
ಹರಿಸೆ ನೀರೊಳು ಹೊಗಿಸಿದನು ಹರಿ ಹಯ ಚತುಷ್ಟಯವ
ಸರಸಿಯಲಿ ಮೊಗವಿಟ್ಟು ಮೊಗೆದವು
ವರ ಜಲವನೆರಡಳ್ಳೆ ಹಿಗ್ಗಲು
ಮುರುಹಿದವು ಮುಖವನು ಮುರಾಂತಕ ತಡಿಯನಡರಿಸಿದ ೩೪

ಕರತಳದಿ ಮೈದಡವಿ ಗಾಯದ
ಸರಳ ಕಿತ್ತೌಷಧಿಯ ಲೇಪವ
ನೊರಸಿದನು ಕರುಣದಲಿ ಚಪ್ಪರಿಸಿದನು ಕಂಧರವ
ಹರುಷ ಮಿಗೆ ಕೊರಳೆತ್ತಿ ನಯನವ
ತಿರುಹಿ ದೇವನ ನೋಡುತಿರ್ದುವು
ತುರಗ ನಾಲ್ಕರ ಪುಣ್ಯ ಸನಕಾದಿಗಳಿಗಿಲ್ಲೆಂದ ೩೫

ಮೊಗಕೆ ಭಾಣವ ಕಟ್ಟಿ ನೆಳಲಲಿ
ಬಿಗಿದು ಫಲುಗುಣ ಸಹಿತ ಕೊಳನನು
ನಗುತ ಹೊಕ್ಕನು ನೋಡುತಿದ್ದುದು ಕೂಡೆ ಕುರುಸೇನೆ
ಬಿಗಿದ ಕತ್ತಲೆ ದೂರದಲಿ ದೀ
ವಿಗೆಯ ಸುತ್ತಲು ಕಟ್ಟಿ ನಿಂದವೊ
ಲಗಣಿತ ಪ್ರತಿಸುಭಟರಿದ್ದುದು ನರನ ಬಳಸಿನಲಿ ೩೬

ಚರಣ ವದನವ ತೊಳೆದು ನಿರ್ಮಳ
ವರಜಲವನೀಂಟಿದರು ನಿರುಪಮ
ಪರಮ ಕರುಣಾರ್ಣವನು ಮೈದುನಸಹಿತ ಸರಸಿಯಲಿ
ಪರಿಹೃತಶ್ರಮನಾಗಿ ಹರುಷೋ
ತ್ಕರುಷದಲಿ ಹರಿ ಕಳೆದುಕೊಂಡನು
ನರಗೆ ಕೊಟ್ಟನು ಹೋಳಿಸಿದ ಕರ್ಪುರದ ವೀಳೆಯವ ೩೭

ರಾಗ ಮಿಗೆ ಬ್ರಹ್ಮಾಂಡಕೋಟಿಯ
ನಾಗುಮಾಡುವನಲಸಿದರೆ ಮುನಿ
ದಾಗ ನುಂಗುವುದೊಂದು ಲೀಲೆ ಮನುಷ್ಯದೇಹದಲಿ
ಲೋಗರೆಂದುದನೈದೆ ಮಾಡುವ
ನಾಗಿ ಜನಿಸಿಹುದೊಂದು ಲೀಲಾ
ಸಾಗರನು ಲಕ್ಷ್ಮೀಪತಿಗೆ ನಮೊ ಎಂದುದಮರಗಣ ೩೮

ಸೆಳೆದು ಪಡಿವಾಘೆಯಲಿ ತುರಗಾ
ವಳಿಯನನುಕೊಳಿಸಿದನು ಹರಿ ಕೈ
ಚಳಕದಲಿ ತುಡುಕಿದನು ಫಲುಗುಣನತುಳ ಗಾಂಡಿವವ
ಉಲಿದುದಾಹವ ಸೇನೆ ರಿಪುಮುಂ
ಡಳಿಕರೋರಣಗೆಡಲು ರಣಮುಂ
ಡಲದ ಪದ್ಮವ್ಯೂಹದಲಿ ಕೆಣಕಿದನು ಕಾಳೆಗವ ೩೯

ಇದು ಕೃತಾಂತನ ಸೀಮೆಗಳವ
ಟ್ಟುದು ಸುಯೋಧನನೃಪತಿ ವಿಗತಾ
ಭ್ಯುದಯನಾದನೆನುತ್ತ ಕರ್ಣಾದಿಗಳು ಕಳವಳಿಸೆ
ಹೆದರೆದೆಯ ಹೇರಾಳ ವೀರರ
ಕದನದನುವನು ಕಂಡು ಕಡುಗೋ
ಪದಲಿ ಕೌರವರಾಯ ಸಮರೋದ್ಯೋಗಪರನಾದ ೪೦

ತಳಿತವಮಳಚ್ಛತ್ರ ಚಾಮರ
ಪಲುಗಿದವು ಸವಹೇಮ ದಂಡದ
ಪಳವಿಗೆಯ ತುದಿವಲಗೆಯಲಿ ಹಾಯ್ಕಿದರು ಪನ್ನಗನ
ಮೊಳಗಿದವು ನಿಸ್ಸಾಳ ಬಿರುದಾ
ವಳಿಯ ಕಹಳೆಗಳೂದಿದವು ನೆಲ
ಮೊಳಗಿದಂತಿರೆ ಬಿರುದ ಹೊಗಳಿತು ಭಟ್ಟ ಸಂದೋಹ ೪೧

ತಳಿತುದರನೆಲೆ ರಾಯ ಥಟ್ಟಿನ
ಕಳವಳಿಗರುರವಣಿಸಿದರು ಮುರಿ
ದೊಳಸರಿವ ಮನ್ನೆಯರ ಹೊಯ್ವರು ಮುಂದೆ ಕಂಬಿಯಲಿ
ಉಲಿವ ಪಾಠಕರೋದುಗಳ ಕಳ
ಕಳಿಕೆಯಲಿ ನೃಪ ಬಂದು ಗುರುವಿನ
ದಳವ ಹೊಕ್ಕನು ನಮಿಸಿ ಬಿನ್ನಹ ಮಾಡಿದನು ನಗುತ ೪೨

ನರನ ಬಲುಗೈತನವನೀ ಮೋ
ಹರದ ಹೆಂಗುಸುತನವ ನೀವವ
ಧರಿಸಿದಿರೆ ಜಗಭಂಡರಿವರಿಗೆ ಬಿರುದುಗಳೆ
ತುರಗ ನೀರಡಸಿದರೆ ರಣದಲಿ
ಸರಸಿಯನು ತೋಡಿದನು ನಮ್ಮನು
ಸರಕು ಮಾಡನು ಕಂಡು ಬಲ್ಲಿರೆ ಮುನ್ನ ನೀವೆಂದ ೪೩

ಅರಸ ಮೃತಸಂಜೀವಿನಿಯ ಬಲು
ಹಿರಲು ಬಹಳವ್ಯಾಧಿ ಮಾಡುವ
ದುರುಳತನ ತಾನೇನು ನರರಿಗೆ ದಿಟ ವಿಚಾರಿಸಲು
ಪರಮ ಪುರುಷೋತ್ತಮ ಮುಕುಂದನ
ಕರುಣಕವಚದ ಬಲದಿನಮರಾ
ಸುರರ ಬಗೆಯನು ಪಾರ್ಥನಿದು ನಮ್ಮಾರ ಹವಣೆಂದ ೪೪

ಹಗೆಯ ಪತಿಕರಿಸುವರೆ ನಾಲಗೆ
ನಿಗುರುವುದು ನೂರು ಮಡಿಯಲಿ ಕಾ
ಳಗಕೆ ತನ್ನನು ಬಿಟ್ಟು ನೋಡಿರೆ ನುಡಿದು ಫಲವೇನು
ತೆಗೆಸುವೆನು ಫಲುಗುಣನನೆನೆ ನಸು
ನಗುತ ಗುರು ಕೌರವ ಮಹೀಶನ
ಮೊಗದ ಸುಮ್ಮಾನಕ್ಕೆ ಹರುಷಿತನಾಗುತಿಂತೆಂದ ೪೫

ಆದಡೆಲೆ ಭೂಪಾಲ ನರನೊಳು
ಕಾದಲೀಶಂಗರಿದು ನೀನಿದಿ
ರಾದಡಪಜಯವಾಗದಿದ್ದರೆ ನಮ್ಮ ಪುಣ್ಯವದು
ಕಾದಲಾಪರೆ ಮಗನೆ ಪರರಿಗೆ
ಭೇದಿಸುವರಳವಲ್ಲ ಕವಚವ
ನಾದಿಯದು ಕೊಳ್ಳೆಂದು ಕೊಟ್ಟನು ಗವಸಣಿಗೆದೆಗೆದು ೪೬

ಇದು ಮಹಾದೇವರದು ವೃತ್ರನ
ಕದನದಲಿ ಕೈಸಾರ್ದುದೀಶಂ
ಗಿದು ಸುರೇಂದ್ರಂಗಾ ಸುರೇಶ್ವರನಾಂಗಿರಂಗಿತ್ತ
ಇದು ಬೃಹಸ್ಪತಿಗಾಂಗಿರನಿನಾ
ದುದು ಭರದ್ವಾಜಂಗೆ ಬಳಿಕಾ
ದುದು ಭರದ್ವಾಜಾಖ್ಯನಿತ್ತನು ತನಗೆ ಕರುಣದಲಿ ೪೭

ನರ ಸುರಾಸುರರಿದನು ಭೇದಿಸ
ಲರಿದು ಕೈಕೊಳ್ಳೆಂದು ಮಂತ್ರಿಸಿ
ಬರಿಗೆ ಕವಚವ ಕಟ್ಟಿದನು ಕೌರವ ಮಹೀಪತಿಗೆ
ಗುರುವಿನಂಘ್ರಿಯೊಳೆರಗಿ ಮರಳಿದು
ಧುರವ ಹೊಕ್ಕನು ಶಕ್ರತನುಜನ
ಕರೆದು ಮೂದಲಿಸಿದನು ತುಳುಕಿದನಂಬಿನಂಬುಧಿಯ ೪೮

ಎಲವೊ ಕೌರವ ಹಿಂದೆ ವಂಚಿಸಿ
ಕಳವಿನಲಿ ಜೂಜಾಡಿ ರಾಜ್ಯವ
ಗೆಲಿದ ಗರ್ವವನುಗುಳು ಸಮರದ್ಯೂತಕೇಳಿಯಲಿ
ಹಲಗೆಯ್ಯೆ ಕುರುಭೂಮಿ ಕೌರವ
ಕುಲದ ತಲೆ ಸಾರಿಗಳು ಸೆರೆಯಲಿ
ಗೆಲಲು ಬಂದೆನು ಕೊಳ್ಳು ಹಾಸಂಗಿಗಳನೆನುತೆಚ್ಚ ೪೯

ಎಸಲು ಪಾರ್ಥನ ಬಾಣವನು ಖಂ
ಡಿಸಿದನೆಲವೋ ತಮ್ಮ ನಿಮಗಿಂ
ದಸುರರಿಪು ತೆತ್ತಿಗನಲೇ ತುಡುಕಲಿ ಸುದರ್ಶನವ
ನುಸಿಗಳೌಕಿದರಕಟ ದಿಗ್ಗಜ
ಘಸಣಿಗೊಂಬುದೆ ನಿನ್ನ ಬಾಣ
ಪ್ರಸರಕಾನಂಜುವೆನೆ ಫಡ ಹೋಗೆನುತ ತೆಗೆದೆಚ್ಚ ೫೦

ಕಾಲುವೊಳೆಗೇಕವನಿಪತಿ ಹರು
ಗೋಲು ನೀವಿನ್ನರಿಯದಿದ್ದರೆ
ಹೇಳೆವಾತ್ಮಸ್ತುತಿಯ ಮಾಡೆವು ಸಾಕದಂತಿರಲಿ
ಮೇಲುಗವಚವ ನಂಬಿ ನಮ್ಮೊಳು
ಕಾಳೆಗವ ನೀ ಬಯಸಿ ಬಂದೆ ನೃ
ಪಾಲ ಜೋಡಿನ ಬಲದಿ ನಮ್ಮನು ಜಯಿಸುವೈ ಎಂದ ೫೧

ಆರ ದೀಪನ ಚೂರ್ಣ ಬಲದಲಿ
ವೀರರುದ್ರನು ಜಗವ ನುಂಗುವ
ನೋರೆಗೆಡೆಯದಿರಂಬ ಸುರಿ ಸುರಿ ಹೊಳ್ಳುನುಡಿಯೇಕೆ
ಸಾರು ನೀ ಬರಹೇಳು ಕೀಚಕ
ವೈರಿಯನು ಪಡಿಸಣವ ನೋಡಲಿ
ಭೂರಿಬಾಣದ ಸವಿಯನೆಂದನು ಕೌರವರರಾಯ ೫೨

ಗರುಡನಾರೋಗಣೆಯ ಬೋನಕೆ
ಮರಳಿ ಪಡಿಸಣವೇಕೆ ಮಾತಿನ
ಮುರಿವುಗಳು ಗೆಲ್ಲವಲೆ ನೀ ನೆರೆ ನೋಡು ಕೈಗುಣವ
ಅರಸ ನಿನ್ನಯ ಕೊರಳ ಕಡಿತಕೆ
ಸರಳು ಕುದಿತದಲೆನಗೆ ತನಗೆಂ
ದೊರಲುತಿವೆ ನಿನಗಿಂದಿನಲಿ ಸಾವಿಲ್ಲ ಹೋಗೆಂದ ೫೩

ಎನುತ ಕೂರಂಬಿನಲಿ ದುರ್ಯೋ
ಧನನನೆಚ್ಚನು ವಜ್ರ ಕವಚದ
ಲನಿತು ಶರವಕ್ಕಾಡಿದವು ಸೊಪ್ಪಾದವೇಣುಗಳು
ಅನಲ ಗಿರಿ ವಜ್ರಾಸ್ತ್ರದಲಿ ಫಲು
ಗುಣನು ಬೊಬ್ಬಿರಿದೆಚ್ಚನೆಚ್ಚಂ
ಬನಿತು ಮುರಿದವು ಮಸೆಯ ಕಾಣದು ಮೈ ಮಹೀಪತಿಯ ೫೪

ಹರಿಯನೆಚ್ಚನು ಫಲುಗುಣನ ತನು
ಬಿರಿಯೆ ಬಿಗಿದನು ಶರವನಾ ರಥ
ತುರಗದೊಡಲಲಿ ಹೂಳಿದನು ಹೇರಾಳದಂಬುಗಳ
ವರ ಕಪೀಂದ್ರನ ಘಾಸಿ ಮಾಡಿದ
ನುರವಣಿಸಿ ಕವಿದೆಸುವ ಭೂಪನ
ಭರದ ಬಲುವೇಗಾಯ್ಲತನವನು ಹೊಗಳಿದನು ಪಾರ್ಥ ೫೫

ಕವಚವಿದೆ ಸರ್ವಾಂಗದಲಿ ನೃಪ
ನವಯುವಕೆ ಕೇಡಿಲ್ಲ ಕೆಲಬಲ
ದವರು ನೆರೆ ಕೈಮಾಡುತಿದೆ ಕರ್ಣಾದಿನಾಯಕರು
ರವಿಯ ಕೈಗಳನಸ್ತಗಿರಿಯಾ
ನುವವೊಲಿದೆ ಮುನಿದಿವನ ಕೊಂದರೆ
ಪವನಜನ ಕೊಂದವನು ಹದನೇನೆಂದು ಚಿಂತಿಸಿದ ೫೬

ಎನುತ ಮೂರಂಬಿನಲಿ ರಾಯನ
ಧನುವ ಖಂಡಿಸಿ ಮತ್ತೆ ಕೂರಂ
ಬಿನಲಿ ನೃಪನಂಗೈಯನೆಚ್ಚನು ಬಾಣ ಥಟ್ಟುಗಿಯೆ
ಜನಪ ನೊಂದನು ಬಳಿಕ ಕೃತವ
ರ್ಮನು ಕೃಪಾಚಾರಿಯನು ನಿನ್ನಯ
ತನುಜನನು ತೊಲಗಿಸಿದರೈ ಧೃತರಾಷ್ಟ್ರ ಕೇಳೆಂದ ೫೭

ರಾಯ ನೊಂದನು ಹರಿಬಕಿಲ್ಲದ
ನಾಯಕರ ಸುಡು ಹೊಟ್ಟೆ ಹೊರೆಕರ
ವಾಯಕಿವದಿರ ಸಂತವಿಟ್ಟನು ಸ್ವಾಮಿಕಂಟಕರ
ಆಯುಧವ ಹಿಡಿದಕಟ ರಣದಲಿ
ಸಾಯಲಮ್ಮರು ಬಿರುದ ಹೊಗಳುವ
ಬಾಯ ನೋಡೆನುತಿದ್ದುದಾ ದುಶ್ಶಾಸನಾದಿಗಳು ೫೮

ಕದಡಿತೀ ಬಲಜಲಧಿ ಸುಭಟರು
ಹೊದರುಗಟ್ಟಿತು ಹೊಳೆವಡಾಯುಧ
ಹೊದಕೆಗಳ ಸತ್ತಿಗೆಯ ಸೂಸುವ ಚಮರ ಸೀಗುರಿಯ
ತುದಿವೆರಳ ಕಿರುದನಿಯ ಕೆಂಪಿನ
ಕದಡುಗಂಗಳ ಕುಣಿವ ಮೀಸೆಯ
ಕದನಗಲಿಗಳು ಕವಿದರೀ ಕರ್ಣಾದಿ ನಾಯಕರು ೫೯

ಮುತ್ತಿದರು ಹಿಂದೆಡಬಲನ ಮುಂ
ದೆತ್ತಲೀಕ್ಷಿಸಲತ್ತ ರಾಯನ
ತೆತ್ತಿಗರ ಕೂರಂಬು ಕವಿದವು ನರನ ಹಯರಥವ
ಎತ್ತ ನೋಡುವಡತ್ತ ಬಲ ದು
ರ್ವೃತ್ತ ಸುಭಟರ ಬಲಶರೌಘದ
ಕತ್ತಲೆಗೆ ಹದನೇನೆನುತ ದೈತ್ಯಾರಿ ಚಿಂತಿಸಿದ ೬೦

ಅರಿಭಟರು ಕಟ್ಟಳವಿಯಲಿ ಮು
ಕ್ಕುರುಕೆ ಮುರರಿಪು ಪಾಂಚಜನ್ಯವ
ನಿರದೆ ಮೊಳಗಿದ ಹನುಮ ಗರ್ಜಿಸಿದನು ಪತಾಕೆಯಲಿ
ಸುರರ ದೈತ್ಯರ ಸಮರಸಿರಿ ವಿ
ಸ್ತರಿಸಿತಿತ್ತಲು ದ್ರೋಣನತ್ತಲು
ತೆರಳಿಚಿದನೈ ಪಾಂಡುಪುತ್ರರ ಸೈನ್ಯ ಸಾಗರವ ೬೧

ನಕುಲನನು ಮುಸೆಗಾಣಿಸಿಯೆ ಸಾ
ತ್ಯಕಿಯ ವಿರಥನ ಮಾಡಿ ಪಾಂಚಾ
ಲಕರನೋಡಿಸಿ ಮತ್ಸ್ಯ ಕೇಕೆಯ ಬಲವ ಬರಿಕೈದು
ಸಕಲ ಸನ್ನಾಹದಲಿ ಚೈದ್ಯ
ಪ್ರಕರವನು ತವೆ ಕೊಂದು ಭೂಪಾ
ಲಕನ ಬೆಂಬತ್ತಿದನು ಭೀಮ ಘಟೋತ್ಕಚರ ಗೆಲಿದ ೬೨

ದಾನವರು ಬಲುಗೈಗಳಪ್ರತಿ
ಮಾನರಹುದಾದಡೆಯು ಸಮರದೊ
ಳಾನಲಸದಳವಸುರರಿಗೆ ಸುರರಿಗೆ ಜಯಾಭ್ಯುದಯ
ಏನ ಹೇಳುವುದಲ್ಲಿ ಸುಭಟ ನಿ
ಧಾನರಿದ್ದುದು ಪಾಂಡವರೊಳವ
ಧಾನಗುಂದನು ರಾಯ ಗದುಗಿನ ವೀರನಾರಯಣ ೬೩

ಹನ್ನೊಂದನೆಯ ಸಂಧಿ

ಸೂ. ವಿಜಯ ವಿಗ್ರಹ ವೀರನಾ ಧ
ರ್ಮಜನ ನೇಮದಲಂದು ವೈರಿ
ವ್ರಜವ ತೊತ್ತಳದುಳಿದು ಸಾತ್ಯಕಿ ಕಂಡನರ್ಜುನನ

ಬವರದೊಳು ಹರಿಪಾಂಚಜನ್ಯದ
ರವ ಭಯಂಕರವಾಯ್ತು ಬಹಳಾ
ಹವದೊಳಗೆ ಪಾರ್ಥಂಗೆ ಬಿದ್ದುದು ಭಟರ ಭಾರಾಂಕ
ಅವನಿ ಬಿರಿದುದು ಧರ್ಮಪುತ್ರನ
ಕಿವಿಗೆ ಸೆಲ್ಲೆಹವಾಯ್ತು ರಣರೌ
ರವದೊಳರ್ಜುನದೇವನಳಿಯದೆ ಮಾಣನಕಟೆಂದ ೧

ತಂದೆ ಸಾತ್ಯಕಿ ಹೋಗು ಫಲುಗುಣ
ನೊಂದನೋ ಜೀವಿಸಿದನೋ ಸುರ
ವೃಂದವನು ಸೇರಿದನೊ ಮೇಣೆಂಬೀ ನಿಧಾನವನು
ತಂದು ನೀನೆನಗರುಹು ಪಾರ್ಥನ
ಹಿಂದೆ ಬದುಕಿಲ್ಲವನಿಯಲಿ ತನ
ಗೆಂದು ದುಗುಡವ ಹಿಡಿದು ಸಾತ್ಯಕಿಗರಸ ನೇಮಿಸಿದ ೨

ಮೊಲನ ಬಲೆಯಲಿ ವನದ ಮದಕರಿ
ಸಿಲುಕಲರಿವುದೆ ಶಿವಶಿವಾ ನರ
ನಳವನರಿಯಾ ಕೃಷ್ಣನಾರೆಂದರಸ ಮರೆದೆಯಲಾ
ಕೊಳಗುಳವನಾರೈದು ಬಾಯೆನೆ
ನಿಲುವುದೆನುಚಿತವರ್ಜುನನ ನೆಲೆ
ಗೊಳಿಸಿ ಬಹೆನೆಂದಾಯುಧವ ಕೊಂಡಡರಿದನು ರಥವ

ದಾರುಕನು ನಿಜ ರಥವನೆಸಗಲು
ದಾರ ಸಾತ್ಯಕಿ ಭೀಮಸೇನಗೆ
ಧಾರುಣೀಶನ ಕೊಟ್ಟು ಭಾರಿಯ ಭಟರ ಗಡಣದಲಿ
ಭಾರಣೆಯಲೈತಪ್ಪ ನಿಜ ಪರಿ
ವಾರವನು ಬೋಳೈಸಿ ನಿಸ್ಸಾ
ಳಾರವದ ಥಟ್ಟಣೆಯಲಿದಿರಾದನು ರಿಪುವ್ರಜಕೆ ೪

ತಳಿತ ಬೆಳುಗೊಡೆಗಳಲಿ ದೆಸೆ ಕ
ತ್ತಲಿಸೆ ಕರಿ ರಥ ತುರಗ ಚರಣೋ
ಚ್ಚಲಿತ ಧೂಳಿಯು ದಂಡು ನಡೆದುದು ಸೂರ್ಯಮಂಡಲಕೆ
ಮೊಳಗಿದವು ಬರಸಿಡಿಲ ಕಣ್ಣಿಯ
ಕಳಚಿದಂತಿರೆ ವಾದ್ಯಚಯವರಿ
ಬಲಕೆ ನಡೆದನು ವೀರಸಾತ್ಯಕಿ ಸಕಲ ಬಲ ಸಹಿತ ೫

ಬರಬರಲು ಮುಂದುಭಯರಾಯರ
ಗರುಡಿಯಧಿಪತಿ ಕಂಡನೆಲೆ ಸಂ
ಗರ ಸಹಾಯಸಮಗ್ರ ಸಾತ್ಯಕಿ ಗಮನವಾವೆಡೆಗೆ
ಧುರದ ಬಡವರನೆಮ್ಮ ವಂದಿಸಿ
ಮರಳು ಮೇಣ್ ನೀ ಸರಳ ಮೊನೆಯಲಿ
ಪರಿಹರಿಸಿ ಹೋಗೆನುತ ಗುರು ಚಾಚಿದನು ನಿಜರಥವ ೬

ನಿಂದು ಕಾದುವ ಮನವೊ ಮೇಣು ಪು
ರಂದರಾತ್ಮಜನಂತೆ ಭಯದಲಿ
ವಂದಿಸಿಯೆ ಬೀಳ್ಕೊಂಬ ಮನವೋ ಹೇಳು ನಿಶ್ಚಯವ
ಎಂದಡಾಲಿಸಿ ನಗುತ ಸಾತ್ಯಕಿ
ಯೆಂದನವಧರಿಸೈ ಗುರೋರಪಿ
ಯೆಂದು ನೀ ಗುರುವೆಂದು ತಲೆವಾಗಿದನು ವಿನಯದಲಿ ೭

ಇತ್ತಲೀತನ ಕೂಡೆ ಕಾದುವ
ಡತ್ತಲರ್ಜುನನಿರವನರಿಯೆನು
ಚಿತ್ತದಲಿ ಖತಿಗೊಂಬನವನೀಪಾಲನೆಂದೆನುತ
ಮತ್ತೆ ಸಾತ್ಯಕಿ ಬಿಲ್ಲನಿಳುಹಿದ
ನುತ್ತಮಾಂಗಕೆ ಕರಯುಗವ ಚಾ
ಚುತ್ತ ಬಿನ್ನೈಸಿದ ಧನುರ್ಧರ ಫಾಲನೇತ್ರಂಗೆ ೮

ಕಳುಹಿದನು ಯಮಸೂನು ಪಾರ್ಥನ
ಬಳಿಗೆ ನೀ ಕೃಪೆ ಮಾಡಿ ತನ್ನನು
ಕಳುಹಬೇಹುದು ನಿಮ್ಮೊಳಿದಿರೇ ರಣಕೆ ತಾನೆನುತ
ಸೆಳೆದ ಬಾಣವನಿಳುಹಿದರೆ ಗುರು
ತೊಲಗಿ ಕೊಟ್ಟನು ಪದವನಹಿತಾ
ವಳಿಗೆ ಸಾತ್ಯಕಿ ಮೊಳಗಿದನು ಕಳಶಜನ ನೇಮದಲಿ ೯

ಪಾರಸಿಕ ನೇಪಾಳ ಸಿಂಹಳ
ವೀರ ಬಾಹ್ಲಿಕ ಯವನ ಕೌಸಲ
ಪಾರಿಯಾತ್ರರು ತುರುಕ ಬರ್ಬರ ವಂಗ ಮಾಗಧರು
ಕೌರವೇಂದ್ರನ ಮನ್ನಣೆಯ ಪರಿ
ವಾರವೀತನ ಕೆಣಕಿದರು ಸರ
ಳೋರಣವ ಸೈಗರೆದರದ್ಭುತವಾಯ್ತು ಸಂಗ್ರಾಮ ೧೦

ಚೀನ ಭೋಟ ವರಾಳ ಕೇಶಿ ಸಂ
ದೀನ ಖುರಸಾಣಾದಿ ದೇಶದ
ಮಾನನಿಧಿಗಳು ಕವಿದು ಮುತ್ತಿತು ಕೈಯ ಕೋಲ್ಗಳಲಿ
ಏನನೆಂಬೆನು ಸಮರದಲಿ ರಾ
ಜಾನುಮಿತ ಮಂತ್ರಣವೆನಿಪ ಮುನಿ
ಪಾನುಮಂತವರಿದಾಯ್ತು ಸಾತ್ಯಕಿಗಾ ಮಹಾಕದನ ೧೧

ಕಡಿದನನಿಬರ ಕೈಯ ಕೋಲ್ಗಳ
ನಡಗುಂದರಿದನನೇಕಭೂಪರ
ಗಡಣವನು ಘಾಡಿಸಿದನಂಬಿನ ಸರಿಯನುರವಣಿಸಿ
ಕಡಗಿ ಸಾತ್ಯಕಿಯೊಡನೆ ಬವರವ
ಹಿಡಿದ ಭಟರಮರರ ವಿಮಾನವ
ನಡರುತ್ತಿದ್ದರು ಕೊಂದನತಿಬಳನಹಿತಮೋಹರವ ೧೨

ಎಡಬಲಕೆ ತೂಳುವ ಮದೇಭವ
ಕಡಿದು ಹರಹಿದನೌಕಿ ಚೂರಿಸಿ
ಗಡಣಿಸುವ ಭೂಪರಿಗೆ ಮಾಡಿದನಮರ ಪದವಿಯನು
ಕಡಿದು ಬಿಸುಟನು ಕೇಣವಿಲ್ಲದೆ
ಕಡುಗಲಿಗಳನು ವೈರಿಸೇನೆಯ
ನಡಗುಂದರಿದನು ಕೆಡಹಿದನು ಜಲಸಂಧಭೂಪತಿಯ ೧೩

ಒಂದು ದೆಸೆಯಲಿ ಪಾರ್ಥ ಸವರಿದ
ನೊಂದು ದೆಸೆಯಲಿ ಸಾತ್ಯಕಿಯು ಸರ
ಳಿಂದ ನೊಂದುದು ಸೇನೆಯೆನೆ ಕೃತವರ್ಮನಿದಿರಾಗಿ
ನಿಂದನೆಲವೋ ಮರುಳೆ ಮೀರಿದ
ಡಿಂದುಧರ ತಲೆಗಾವಡೀಗಳೆ
ಕೊಂದಡಲ್ಲದೆ ಬಿಡೆನೆನುತ ಮೂದಲಿಸುತೈತಂದ ೧೪

ನರನ ಮೈಗಂಡೀತನಲಿ ಸಂ
ಗರವನಾದರಿಸುವೆನು ಬಳಿಕಿಂ
ದರಿದು ಕೃತವರ್ಮಕನ ರಥವನು ಧನುವ ಸಾರಥಿಯ
ಸರಳು ಮೂರರಲೆಚ್ಚು ರಿಪುವನು
ಧುರದಿ ಹಿಂಗಿಸಿ ಹಂಸಮಯ ಮೋ
ಹರದೊಳಗೆ ಮೊಳಗಿದನು ತಾಗಿದನತಿರಥಾವಳಿಯ ೧೫

ಹೊಗಿಸದಿರಿ ಸಾತ್ಯಕಿಯ ಹಿಂದಕೆ
ತೆಗೆಸು ತೆಗೆಸೋ ಫಲುಗುಣನ ತೆ
ತ್ತಿಗನಿವನು ಹೊಯ್ ಹೊಯ್ಯೆನುತ ಹೊರವಂಟರತಿರಥರು
ಬಿಗಿದ ಬಿಲುಗಳ ತಿರುವೆರಳ ಬೊ
ಬ್ಬೆಗಳ ಕಿವಿಗಡಿಯಂಬುಗಳಿನಾ
ಳುಗಳ ದೇವನ ತರುಬಿದರು ಕೌರವ ಸಹೋದರರು ೧೬

ಅವರ ಬಲನೆಡವಂಕದಲಿ ಸೈಂ
ಧವನ ಮೊನೆಯವರೌಕಿದರು ಕೌ
ರವನ ಬಳಿಯಲಿ ಸಂದಣಿಸಿದರು ಕರ್ಣ ನಂದನರು
ಬವರವಸದಳವಾಯ್ತು ರಿಪುಭಟ
ನಿವಹ ಮಧ್ಯದೊಳೀತ ಸಿಲುಕಿದ
ನವಿರಳಾಸ್ತ್ರವ ಸುರಿದು ಕಾಣನು ಹಗೆಗೆ ಹರಿವುಗಳ ೧೭

ಅತ್ತ ಸಾತ್ಯಕಿಗಾಯ್ತು ರಣದೊ
ತ್ತೊತ್ತೆ ಮೋಹರ ಮಧ್ಯರಂಗದೊ
ಳಿತ್ತಲರ್ಜುನನಾಹವವನೇನೆಂಬೆನದ್ಭುತವ
ಮತ್ತೆ ಕೃಷ್ಣನ ಶಂಖನಾದವ
ನಿತ್ತಲವನೀಪಾಲ ಕೇಳಿದು
ಚಿತ್ತ ಕದಡಿದುದಡಿಗಡಿಗೆ ಮನನೊಂದು ಬಿಸುಸುಯ್ದು ೧೮

ಹನ್ನೆರಡನೆಯ ಸಂಧಿ

ಸೂ. ರಾಯಸೇನಾ ಸೂರೆಕಾರನ
ಜೇಯ ಮಾರುತ ಸುತನು ಕೌರವ
ರಾಯನನುಜರ ಸೀಳಿದನು ಕಳಶಜನ ಪರಿಹರಿಸಿ

ದೃಗುಯುಗಗಳ ನೀರೇರಿದವು ಸೆರೆ
ಬಿಗಿದು ಹಲುಬಿದನಕಟ ಕಡು ದೇ
ಸಿಗನು ತಾ ತನ್ನೊಡನೆ ಫಲುಗುಣನೇಕೆ ಜನಿಸಿದನೊ
ಹಗೆಯ ಹರಿವಿಂಗೊಪ್ಪುಗೊಟ್ಟೆನು
ಮಗನಳಲು ಮಿಗೆ ಹೂಣೆ ಹೊಕ್ಕನು
ಮಗುಳಲರಿಯನು ತಮ್ಮನೆನುತವನೀಶ ಚಿಂತಿಸಿದ ೧

ಕಳುಹಲತ್ತಲು ಹೋಗಿ ಸಾತ್ಯಕಿ
ತಿಳಿದು ಮರಳಿದುದಿಲ್ಲ ಫಲುಗುಣ
ನಳಿದನೋ ಮೇಣುಳಿದನೋ ಶರಹತಿಗೆ ಬಳಲಿದನೊ
ತಿಳಿದು ಹೇಳುವರಾರು ಪಟುಭಟ
ರೊಳಗೆ ಮಕುಟದ ಮಹಿಮರೆನುತಳ
ವಳಿದು ಭೀಮನ ವದನವನು ನೋಡಿದನು ಭೂಪಾಲ ೨

ಎಲೆ ವೃಕೋದರ ವೈರಿಮೋಹರ
ದೊಳಗೆ ಸಿಲುಕಿದನೋ ಕಿರೀಟಿಗೆ
ನೆಲದ ಋಣಸಂಬಂಧ ಸವೆದುದೊ ಮೇಣು ಸಮರದಲಿ
ತಿಳಿಯಲಟ್ಟಿದ ಸಾತ್ಯಕಿಗೆ ಕೊಳು
ಗುಳದ ಭಾರಣೆಯಾಯ್ತು ಫಲುಗುಣ
ನಳಬಳವನರಿದಲ್ಲದೆನ್ನಸು ಸೈರಿಸದು ತನುವ ೩

ಮುರವಿರೋಧಿಯ ಪಾಂಚಜನ್ಯದ
ಪರಮ ರವ ಪಾರ್ಥನ ಪತಾಕೆಯ
ವರ ಕಪೀಂದ್ರನ ರಭಸವೇ ತುಂಬಿತು ಜಗತ್ರಯವ
ನರನ ಧನುವಿನ ದನಿಯ ಕೇಳೆನು
ಕರಗಿತಂತಃಕರಣವರ್ಜುನ
ನಿರವ ಕಾಣಿಸಿ ಬಾಯೆನಲು ಕೈಕೊಂಡನಾ ಭೀಮ ೪

ಅರನೆಲೆಯ ಸುಯ್ದಾನ ಪಾಂಚಾ
ಲರಿಗೆ ನೇಮಿಸಿತನಿಲತನಯನ
ಬೆರಳ ಸನ್ನೆಗೆ ತೀವಿದಂಬಿನ ತೇರ ಚಾಚಿದರು
ಕರೆದು ತನ್ನ ವಿಶೋಕಗಖಿಳಾ
ಭರಣವನು ಕೊಟ್ಟನು ವರೂಥದ
ಹರಿಗೆ ಹೊಡಮಂಟಡರಿದನು ನವ ರತುನಮಯ ರಥವ ೫

ಸೂಳು ಮಿಗಲಳ್ಳಿರಿದವುರು ನಿ
ಸಾಳತತಿ ದಿಗುವಳಿಯುದಲಿ ಕೈ
ಮೇಳವಿಸಿದವು ತಂಬಟಧ್ವನಿ ಜಡಿವ ಕಹಳೆಗಳು
ಕೀಳ ಬಗೆಯದೆ ಕೆರಳಿ ಹೊಯ್ದವು
ಕಾಲಲಿಳೆಯನು ಕುದುರೆ ಮೋರೆಯ
ತೋಳಿನಲಿ ಮೋದಿದವು ಮಹಿಯನು ಸೊಕ್ಕಿದಾನೆಗಳು ೬

ಒದಗಿತೆಡಬಲವಂಕದೊಯ್ಯಾ
ರದಲಿ ರಾವ್ತರು ಮುಂದೆ ತಲೆದೋ
ರಿದರು ಮುಂಗುಡಿಯವರು ಚೂಣಿಯ ಹೊಂತಕಾರಿಗಳು
ಅದಿರ್ವ ಖಡುಗದ ಕಾಂತಿ ಸೂರ್ಯನ
ಹೊದಿಸಿದುದು ಹೊದರೆದ್ದು ಕೊಂತದ
ತುದಿಗಳಿತ್ತವು ರಾಹುಭಯವನು ರವಿಯ ಮಂಡಲಕೆ ೭

ಕೆಲಕೆ ಹೊಳೆದವು ಕಡುಗುದುರೆ ನೆಲ
ನಳುಕೆ ನಡೆದವು ದಂತಿ ದೆಸೆಗಳ
ಹೊಲಗೆ ಹರಿಯದೆ ಮಾಣವೆನೆ ಹೊಕ್ಕವು ರಥಾನೀಕ
ತಳಪಟವ ತುಂಬಿತ್ತು ಪಯದಳ
ವುಲಿವ ಕಹಳೆಯ ಚೆಂಬುಕನ ಕಳ
ಕಳಿಕೆ ಮಿಗೆ ಕೈಕೊಂಡುದನಿಲ ಕುಮಾರಕನ ಸೇನೆ ೮

ಮುಸುಕಿದನು ರವಿ ಧೂಳಿಯಲಿ ಹೊಳೆ
ವಸಿ ಮುಸುಂಡಿ ತ್ರಿಶೂಲ ಕೊಂತ
ಪ್ರಸರ ಕಾಂತಿಗಳಿಳುಹಿದವು ಖದ್ಯೋತ ದೀಧಿತಿಯ
ಬಿಸಜಸಖನಡಗಿದರೆ ನಭದಲಿ
ಮಸಗಿದವು ತಾರೆಗಳೆನಲು ಶೋ
ಭಿಸಿದವವನೀಪಾಲ ಮೌಳಿ ಸುರತ್ನ ರಾಜಿಗಳು ೯

ಎಲೆಲೆ ರಿಪುಸಂವರ್ತನೊಳು ಕೊಳು
ಗುಳಕೆ ವರ್ತಿಸಲರಿದೆನುತ ತ
ಲ್ಲಳಿಸಿ ತೆತ್ತುದು ಮನವನವನೀಪಾಲ ಸಂದೋಹ
ಹಳವಿನಬ್ಬರಕಂಜದಿರಿ ನಿಜ
ಗಳದ ಹಸುಗೆಯ ಹಾರದಿರಿಯೆಂ
ದಳಿಮನರು ಬೆಂಗೊಟ್ಟು ಹೊಕ್ಕುದು ಕಳಶಜನ ಮರೆಯ ೧೦

ಮಿಗೆ ವಿರೋಧಿಯ ಬಸುರನುಗಿ ಕು
ನ್ನಿಗಳ ಕೆಡೆ ಬಡಿ ಸೀಳು ಹೆಣನುಂ
ಗಿಗಳ ಹೊಯ್ ಹೊಯ್ ರಣಕೆ ಹೆದರುವ ಕೌರವಾನುಜರ
ಹಗೆಯ ಶೋಣಿತ ಪಾನದರವ
ಟ್ಟಿಗೆಗೆ ಕರೆ ಭೇತಾಳ ಭೂತಾ
ಳಿಗಳನೆನುತ ಸುಧೈರ್ಯ ನಡೆದನು ಗರುಡಿಯಾಚಾರ್ಯ ೧೧

ಏನಿದೆತ್ತಣ ರಭಸವೆಲೆ ಪವ
ಮಾನಸುತ ಫಡ ಮರಳು ನಿನ್ನನು
ಮಾನವಾವುದು ಗಮನವೆಲ್ಲಿಗೆ ಮಾಡು ಬಿನ್ನಹವ
ಆನಿರಲು ಕೈಕೊಳ್ಳದುರುಬುವ
ದಾನವಾಮರರಿಲ್ಲ ನಿನ್ನಳ
ವೇನು ಸಾಕೊಮ್ಮಿಂಗೆ ಕಾವೆನು ಬೇಡ ಮರಳೆಂದ ೧೨

ಎಲೆ ಮರುಳೆ ಗುರುವೆಮಗೆ ನೀ ಹೆ
ಕ್ಕಳಿಸಿ ನುಡಿದರೆ ಮೊದಲಲಂಜುವೆ
ನುಳಿದ ಮಾತಿನಲೇನು ನಿಮ್ಮೊಡನೆನಗೆ ಸಂಗ್ರಾಮ
ಬಳಿಕವೀಗಳು ನಿಮ್ಮ ಮೋಹರ
ದೊಳಗೆ ಕೊಡಿ ಬಟ್ಟೆಯನು ಸಿಲುಕಿದ
ಫಲುಗುಣನ ತಹೆನಣ್ಣದೇವನ ನೇಮ ತನಗೆಂದ ೧೩

ಆದರೆಲವೋ ಭೀಮ ಪಾರ್ಥನ
ಹಾದಿಯಲಿ ಗಮಿಸುವರೆ ಸಾತ್ಯಕಿ
ಹೋದವೊಲು ನೀನೆಮಗೆ ವಂದಿಸಿ ಮಾರ್ಗವನು ಪಡೆದು
ಹೋದಡೊಪ್ಪುವುದಲ್ಲದೇ ಬಿರು
ಸಾದಡಹುದೇ ಬೀಳು ಚರಣಕೆ
ಕಾದುವರೆ ಹಿಡಿ ಧನುವನೆಂದನು ದ್ರೋಣನನಿಲಜನ ೧೪

ತರಳರರ್ಜುನ ಸಾತ್ಯಕಿಗಳವ
ದಿರಿಗೆ ಪಂಥವದೇಕೆ ನಿಮ್ಮನು
ಗರುಡಿಯಲಿ ವಂದಿಸುವ ವಂದನೆಯುಂಟೆ ಸಮರದಲಿ
ಮರುಳಲಾ ಮರುಮಾತು ಕಡುವ್ಯ
ದ್ಧರಿಗದೇಕೆಂಬಂತೆ ಚಿತ್ತದ
ಹುರುಳ ಬಲ್ಲೆನು ಪಥವ ಬಿಡಿ ಕೆಲಸಾರಿ ಸಾಕೆಂದ ೧೫

ಫಡ ಫಡೆಲವೋ ಭೀಮ ಬಣಗುಗ
ಳೊಡನೆ ಸರಿಗಂಡೆನ್ನ ಬಗೆಯದೆ
ಕಡುಗುವೈ ಕಾಳೆಗಕೆ ತಪ್ಪೇನಾದಡನುವಾಗು
ಒಡಲನೀವೆನು ವಿನಯದೆಡೆಗವ
ಗಡಿಸಿದರೆ ಕೊಲುವೆನು ರಿಪುವ್ರಜ
ಮೃಡನನರಿಯಾ ದ್ರೋಣ ತಾನೆನುತೆಚ್ಚನನಿಲಜನ ೧೬

ಈತನೊಡನಂಬಿನಲಿ ಕಾದಲು
ಭೂತನಾಥಂಗರಿದು ಸಾರಥಿ
ಪೂತುರೇ ಎನುತಿಳಿದು ರಥವನು ತುಡುಕಿದನು ಗದೆಯ
ಆತನಸ್ತ್ರಕೆ ದಂಡೆಯೊಡ್ಡಿ ಮ
ಹಾತಿಬಳ ಕವಿದನು ವಿರೋಧಿಯ
ಸೂತನನು ಕೆಡೆಹೊಯ್ದು ಕೊಂದನು ರಥದ ಕುದುರೆಗಳ ೧೭

ಇದು ನಿಮಗೆ ವಂದನೆಯೆನುತ ನಿಜ
ಗದೆಯಲಾತನ ರಥವ ಹುಡಿಗು
ಟ್ಟಿದನು ಸುರಗಿಯನುಗಿಯಲಪ್ಪಳಿಸಿದನು ಮೋಹರವ
ಇದಿರಲಿರಲಳವಡದೆ ಗುರು ಹಿಂ
ಗಿದನು ಶಕಟವ್ಯೂಹವನು ಮ
ಧ್ಯದೊಳು ಘಟ್ಟುಗಿದುರವಣಿಸಿ ಪವಮಾನಸುತ ನಡೆದ ೧೮

ಹರಿಯ ಕುಲಿಶದ ಧಾಳಿಯಲಿ ಕುಲ
ಗಿರಿಗಳಿಬ್ಬಗಿಯಾದವೊಲು ಮಂ
ದರದ ಘಾರಾಘಾರಿಯಲಿ ಬಾಯ್ಬಿಡುವ ಕಡಲಂತೆ
ಅರಿ ವರೂಥಿನಿ ಕೆದರಿ ತಳಿತವು
ತುರಗ ಕರಿ ರಥ ಪಾಯಿದಳ ಬಲ
ಹೊರಳಿಯೊಡೆದುದು ಹೊದರು ತಗ್ಗಿತು ಹೂಣಿಗರ ಮನದ ೧೯

ಹೊಸರಥವ ತಾ ಹೋದನೇ ಸಂ
ಧಿಸುವೆನಿನ್ನನಿಲಜನು ಕುಂತಿಯ
ಬಸುರ ಹೊಕ್ಕರೆ ಹೊಗುವೆನೆನುತಾ ದ್ರೋಣ ಗಜಬಜಿಸೆ
ಕುಸುರಿದರಿದನು ಮುಂದೆ ವೈರಿ
ಪ್ರಸರವನು ಸಂವರ್ತ ರುದ್ರನೊ
ಹೊಸಬನಿವನಾರೆಂದು ತಲ್ಲಣಿಸಿತ್ತು ರಿಪುಸೇನೆ ೨೦

ಎಚ್ಚನುಚ್ಚಳಿಸುವ ತುರಂಗವ
ನೊಚ್ಚತವೆ ಕೊಂದನು ರಥೌಘವ
ನಚ್ಚರಿಯರೊಡನಾಡಿಸಿದನುರವಣಿಪ ಕಾಲಾಳ
ಕಿಚ್ಚುಗಿಡಿಗೆದರುವ ಸಿಳೀಮುಖ
ಕೊಚ್ಚಲಿಭದವಯವವನಮರರಿ
ಗಚ್ಚರಿಯ ತನಿಸೂರೆ ಬಿಟ್ಟನು ಭೀಮ ಬವರದಲಿ ೨೧

ತನತನಗೆ ಮುಂಕೊಂಡು ಸಂಗರ
ವೆನಗೆ ತನಗೆಂಬಖಿಳವೀರಾ
ವನಿಪರಹಮಿಕೆಯಿಂದ ಹೊಯ್ದರು ಪವನನಂದನನ
ಮೊನೆಯಲಗಿನಂಬುಗಳ ಬಿರುಸರಿ
ಗನಿಬರಂಗವ ತೆತ್ತುವಾತಾ
ಯನಿತ ವಿಗ್ರಹವಾಯ್ತು ನಿಗ್ರಹದತಿಮಹಾರಥರು ೨೨

ಸಿಡಿದ ಕಣ್ಣಾಲಿಗಳ ಮೀಂಗಳ
ಕೆಡೆದ ಸತ್ತಿಗೆಯಂಬುಜಪಂಕ್ತಿಯ
ಬಿಡುಮಿದುಳ ರಾಸಿಗಳ ರಚನೆಯ ರಾಜಹಂಸೆಗಳ
ಬಿಡದೆ ಬೆಂಡೆದ್ದೇಳ್ವ ತಲೆಗಳ
ಗಡಣ ನೀರ್ವಕ್ಕಿಗಳ ಸರಸಿಯ
ನಡುವೆ ನಲಿ ನಲಿದಾಡುತಿರ್ದುದು ಭೀಮ ವನದಂತಿ ೨೩

ಮಕುಟಬದ್ಧ ಮಹೀಶ ವೇಣು
ಪ್ರಕರದಲಿ ಛಟಛಟಿಸಿ ತುರಗ
ಪ್ರಕರ ಪಲ್ಲವ ಭೂಜರಾಜಿಗಳೊಳಗೆ ಘುಳುಘುಳಿಸಿ
ಸಕಲ ಗಜ ರಥ ಭೂಧರಾಧಿ
ತ್ಯಕೆಯೊಳಗೆ ಭುಗಿಭುಗಿಸಿ ರಿಪುವನ
ನಿಕರದಲಿ ಸಲೆ ಬೀದಿವರಿದುದು ಭೀಮ ದಾವಾಗ್ನಿ ೨೪

ಕಲಕೆ ಚಕ್ರವ್ಯೂಹ ಹಂಸಾ
ವಳಿಗೆ ಹಂಸವ್ಯೂಹ ಹಿಂದಣ
ಬಲದೊಳಾ ಮೋಹರಕೆ ತರಹರವಾಯ್ತು ಪದ್ಮದಲಿ
ಬಳಿಕ ಮಕರವ್ಯೂಹದಲಿ ಮಂ
ಡಳಿಕರಾಂತುದು ಭೀಮಸೇನನ
ಕೊಳುಗಳಕೆ ಕೈಕೊಂಡರಾ ಕರ್ಣಾದಿ ಪಟುಭಟರು ೨೫

ನಿಲಿಸಿದರು ರವಿಸುತನನೀತನ
ತಲೆಯ ವಿಾಸಲು ತಮ್ಮ ಸರಳದು
ಗೆಲವು ನಿಮಗಲ್ಲೆನುತ ಹೊಕ್ಕರು ಕೌರವಾನುಜರು
ಚಲಿಸಿತರನೆಲೆ ಕೋಡಕೈಯಲಿ
ಮೊಳಗಿದವು ನಿಸ್ಸಾಳ ಬಲು ಮಂ
ಡಳಿಕರೆಡಬಲವಂಕದಲಿ ನೆರೆದುದು ಕುಮಾರಕರು ೨೬

ಸಾಲು ಗೋವಳಿಗಟ್ಟಿಗೆಯ ಕುಂ
ತಾಳಿಗಳ ತೂಗಾಟ ವಿಾಗೆ ದು
ವ್ವಾಳಿಗಳ ದೆಖ್ಖಾಳ ಗಜ ರಥ ತುರಗ ಸೇನೆಯಲಿ
ಮೇಲೆ ಹೇಳಿಕೆಯಾಯ್ತು ಕವಿವ ನೃ
ಪಾಲಕರು ಭೀಮಂಗೆ ಹರಣದ
ಸಾಲಿಗರು ಸಂದಣಿಸಿತಬುಜವ್ಯೂಹದಗ್ರದಲಿ ೨೭

ದುರುಳರುರವಣಿಸಿದರು ಜವ್ವನ
ದುರು ಮದದ ಭರತಾನ್ವಯದ ದು
ರ್ಧರ ಮದದ ಘನಭುಜಮದದ ದಿವ್ಯಾಸ್ತ್ರದರಿಕೆಗಳ
ಭರಮದದ ಮರ್ಕಟವಿಲಾಸರು
ಧುರರಚಿತ ಪರಿಹಾಸರಭಿಜನ
ಕುರುವಿನಾಶರು ತಾವಕರು ಧೃತರಾಷ್ಟ್ರ ಕೇಳೆಂದ ೨೮

ಎಳೆಯ ಬಾಳೆಯ ಸುಳಿಗೆ ಸೀಗೆಯ
ಮೆಳೆಯೊಡನೆ ಸರಸವೆ ಕುಮಾರರ
ಬಲುಹ ನೋಡು ವಿಶೋಕ ತೊಡಗಿದರೆಮ್ಮೊಡನೆ ರಣವ
ಕಲಹದಲಿ ಮೈದೋರಿದಿವದಿರ
ತಲೆಗಳಿವು ವಾರಕದವಿವನರೆ
ಗಳಿಗೆಯಲಿ ತಾ ಕೊಂಬೆನೆಂದನು ನಗುತ ಕಲಿಭೀಮ ೨೯

ಬಿಲುದೆಗಹಿನಾ ಕರ್ಣಪೂರದ
ಹಿಳುಕಿನನಿಲಜನಿರಲು ಸಿಂಹದ
ಹೊಲನ ಹೊಗುವಿಭದಂತೆ ಹೊರಕಾಲ್ಗೊಳುತಲಿರೆ ಕಂಡು
ತೊಲಗದಿರಿ ತಮ್ಮಂದಿರಿರ ಕುರು
ಕುಲಲಲಾಮರು ಜಗದೊಳತಿ ವೆ
ಗ್ಗಳೆಯ ಸುಭಟರು ನೀವೆನುತ ತೆಗೆದೆಚ್ಚನಾ ಭೀಮ ೩೦

ಸರಳ ಸೊಂಪಿನ ಸೋಹಿನಲಿ ನಿರಿ
ಗರುಳ ದಾವಣಿವಲೆಗಳಲಿ ಸಂ
ಗರದ ಸುಭಟವ್ರಜದ ಮಧ್ಯದ ಗೂಡುವಲೆಗಳಲಿ
ಉರುಗದೆಯ ದಡಿವಲೆಯಲಸಿ ಮು
ದ್ಗರದ ಸಿಡಿವಲೆಗಳಲಿ ಸಮರದೊ
ಳರಿಮೃಗವ್ರಾತವನು ಭೀಮಕಿರಾತ ಕೈಕೊಂಡ ೩೧

ವಿಂದನನುವಿಂದನನು ಚಿತ್ರಕ
ನಂದನನ ಚಿತ್ರಾಂಗದನ ಸಾ
ನಂದ ದುಸ್ಸಹ ಶಂಕುಕರ್ಣ ಸುದೀರ್ಘಬಾಹುಕನ
ನಂದ ಚಿತ್ರಾಂಬಕನ ಕುಂತಿಯ
ನಂದನನು ಬರಿಕೈದು ಭಾಸ್ಕರ
ನಂದನಾಶ್ವತ್ಥಾಮರನು ಮೊದಲಿಸಿ ತಾಗಿದನು ೩೨

ಕೆಡೆದುದನುಜರು ಕೇಣವಿಲ್ಲದೆ
ತೊಡಗಿದಾಹವದೊಳಗೆ ಕೊಂದವ
ಕೊಡನಮಗನೋ ದೂರುಹೊತ್ತುದು ಬರಿದೆ ಹಗೆಗಳಿಗೆ
ನುಡಿದು ಫಲವೇನಿನ್ನು ಭೀಮನ
ಬಿಡದೆ ಸುಭಟರು ನೂಕಿಯೆಂಬೀ
ನುಡಿಯ ಕೇಳಿದು ಖಾತಿಗೊಂಡನು ಮತ್ತೆ ಕಲಿ ದ್ರೋಣ ೩೩

ಹದಿಮೂರನೆಯ ಸಂಧಿ

ಸೂ. ಗಂಡುಗಲಿ ಕೋದಂಡ ರುದ್ರನ
ಕಂಡು ವಿರಥನ ಮಾಡಿದನು ಮಾ
ರ್ತಾಂಡತನಯನ ಗೆಲಿದು ರಣದಲಿ ನೊಂದನಾ ಭೀಮ

ಕೇಳು ಜನಮೇಜಯ ಧರಿತ್ರೀ
ಪಾಲ ಕಡುಗೋಪದಲಿ ಕಳಶಜ
ನಾಳ ಮೇಳೈಸಿದನು ನಿಜಮೋಹರವ ಹಿಂದಿಕ್ಕಿ
ಕಾಳೆಗದೊಳನಿಲಜನನರಸುತ
ಲೋಲುಪತಿ ಮಿಗೆ ಬರುತ ಭೀಮನ
ಕೋಲ ಕೋಳಾಹಳವನೀಕ್ಷಿಸುತಲ್ಲಿಗೈತಂದ ೧

ಒದೆ ಗದಾದಂಡದ ಹತಿಗೆ ಮು
ಗ್ಗಿದ ಮತಂಗ ವರೂಥಚಯವಿ
ಲ್ಲಿದೆ ಶರಾಳಿಯಲತಿರಥರ ಗೋನಾಳಿಗಡಿತವಿದೆ
ಒದೆ ರಥದ ಪದಘಾತದಲಿ ಹೆಣ
ಮಿದೆಯು ಪಾಯದಳೌಘ ಭೀಮನ
ಕದನ ಪಥವಿದೆಯೆನುತ ನಗುತೈತಂದನಾ ದ್ರೋಣ ೨

ಕಡಿದ ಖಡೆಯಂದ ಕುಸುರಿಗಳ ಚಿನ
ಕಡಿಯ ಹೀರಾವಳಿಯ ಮುಕುಟದ
ಸಡಿಲಿದನುಪಮ ರತುನರಾಜಿಯ ಮುರಿದ ಕಂಕಣದ
ಕಡಿಕು ಪಸರಿಸೆ ಕೌರವಾನುಜ
ರಡೆಗೆಡೆದ ರಣ ಕಾಂಚನಾದ್ರಿಯ
ಸಿಡಿಲ ಕಾಳೆಗದಂತೆ ಮೆರೆದಿರೆ ಕಂಡನಾ ದ್ರೋಣ ೩

ಉಡಿದ ಬೆಳುಗೊಡೆಯಬುಜ ಪಂಕ್ತಿಯ
ಸಿಡಿದ ಚಮರಿಯ ಹಾವಸೆಯ ಕೆಸ
ರಿಡುವ ರಕುತಾಂಬುಗಳ ನರವಿನ ನಾಳದೇಳಿಗೆಯ
ಕಡುಮದದ ಕಾಡಾನೆ ಹೊಕ್ಕೊಡ
ನೊಡನೆ ಕಲಕಿದ ಕೊಳನವೊಲು ಭಯ
ವಡಸುತಿದೆ ಪವನಜನ ರಣಪಥವೆನುತ ಬರುತಿರ್ದ ೪

ಧುರದೊಳಗೆ ಗುರು ವಹಿಲ ಮಿಗಲ್ಕೆ
ತರಲು ದೂರಕೆ ಕೇಳಲಾದುದು
ಹರಿಸುತನ ಹರಿನಾದ ತೇಜಿಯು ರಥದ ರೌದ್ರರವ
ತಿರುವಿನಬ್ಬರವಂಬಿನುಬ್ಬರ
ಧುರರಭಸ ಕಲ್ಪಾಂತ ಘನ ಸಾ
ಗರದ ಮೊರೆವಾಳಾಪ ಭೀಮನ ಸಮರದಾಟೋಪ ೫

ಅತ್ತಲದೆ ಪವನಜನ ಕಳಕಳ
ದತ್ತ ಹರಿಸೈ ರಥವನೆನುತು
ದ್ವೃತ್ತ ಭೀಮನನೈದಿದನು ಚಾಪಾಗಮಾಚಾರ್ಯ
ಇತ್ತಲಿತ್ತಲು ಭೀಮ ಬಣಗುಗ
ಳತ್ತಲೇಕೈ ವೀರ ಶೌರ್ಯೋ
ನ್ಮತ್ತನಹೆಯಿದಿರಾಗೆನುತ ಕೆಣಕಿದನು ಪವನಜನ ೬

ತಿರುಗಿನೋಡಿದನಸ್ತ್ರ ಶಿಕ್ಷಾ
ಗುರುವ ಕಂಡನು ಮನದೊಳಾತನ
ಚರಣಕಭಿನಮಿಸಿದನು ನುಡಿದನು ವಿನಯಪರನಾಗಿ
ಗುರುವೆ ಬಿಜಯಂಗೈದ ಹದನನು
ಕರುಣಿಸೈ ಕಾಳೆಗದ ಭಾರಿಯ
ಭರವಸದಲಾನಿದ್ದೆನೆಂದನು ನಗುತ ಕಲಿಭೀಮ ೭

ಅನಿಲಸುತ ಫಡ ಮರುಳೆ ಠಕ್ಕಿನ
ವಿನಯವೇ ನಮ್ಮೊಡನೆ ಕೌರವ
ನನುಜರನು ಕೆಡೆಹೊಯ್ದು ಗರ್ವದ ಗಿರಿಯನಿಳಿಯೆನುತ
ಕನಲಿ ಕಿಡಿ ಸುರಿವಂಬ ತೆಗೆದು
ಬ್ಬಿನಲಿ ಕವಿದೆಸುತಿರೆ ವೃಕೋದರ
ನನಿತು ಶರವನು ಕಡಿದು ಬಿನ್ನಹ ಮಾಡಿದನು ನಗುತ ೮

ಗುರುವೆಮಗೆ ನೀವ್ ನಿಮಗೆ ನಾವ್ ಡಿಂ
ಗರಿಗರೆಮ್ಮಿತ್ತಂಡವಿದರಲಿ
ವರ ವಿನೀತರು ಕೆಲರು ಕೆಲಬರು ಧೂರ್ತರಾಗಿಹರು
ನರ ಯುಧಿಷ್ಠಿರ ನಕುಳ ಸಹದೇ
ವರವೊಲೆನಗಿಲ್ಲತಿ ಭಕುತಿ ಸಂ
ಗರದೊಳೆನ್ನಯ ದಂಡಿ ಹೊಸಪರಿ ಬೇಡ ಮರಳೆಂದ ೯

ಎಲವೊ ದುಷ್ಟಗ್ರಹದ ಬಾಧೆಯ
ನಿಲಿಸಲರಿಯರೆ ಮಂತ್ರವಾದಿಗ
ಳಳಿಬಲವನಂಜಿಸಿದ ಕೊಬ್ಬುಗಳಕಟ ನಮ್ಮೊಡನೆ
ಗೆಲುವ ಕೊಡುವೆನು ವಾಸಿಯೋ ಮ
ಕ್ಕಳುಗಳೊಡನೆದಿರ್ದಡತಿ ವೆ
ಗ್ಗಳನು ನೀನೆಂದಂಬ ಸುರಿದನು ಪವನಜನ ಮೇಲೆ ೧೦

ನಿಲ್ಲು ಕಳಶಜ ತಪ್ಪಿದವ ನಾ
ನಲ್ಲ ಫಲುಗುಣ ಸಾತ್ಯಕಿಯವೋ
ಲಿಲ್ಲ ತನ್ನಲಿ ವಿನಯ ಹಾರದಿರಿಲ್ಲಿ ಮನ್ನಣೆಯ
ಬಿಲ್ಲ ಗುರುವಿನ ಬಿಂಕ ಬಯಲಾ
ಯ್ತಿಲ್ಲಿಯೆಂಬಪಕೀರ್ತಿ ಹೊರುವುದು
ಬಲ್ಲೆನೆನುತುರವಣಿಸಿದನು ಮುಂಗೈಯ ಮರೆವಿಡಿದು ೧೧

ಮಳೆಗೆ ತೆರಳದೆ ಕೋಡ ಬಾಗಿಸಿ
ಕಲಿವೃಷಭ ಹೊಗುವಂತೆ ದ್ರೋಣನ
ಬಲುಸರಳ ಸರಿವಳೆಗೆ ದಂಡೆಯನೊಡ್ಡಿ ದಳವುಳಿಸಿ
ಅಳವಿದಪ್ಪಡೆ ಕೆಲದ ಖಡ್ಗವ
ಸೆಳೆದು ಗುರುವಪ್ಪಳಿಸಿ ಕೈಯಲಿ
ಕಳೆದು ಕಟ್ಟಳವಿಯಲಿ ಹೊಕ್ಕನು ಭೀಮ ಬೊಬ್ಬಿರಿದು ೧೨

ಗಜರಿನಲಿ ಗಿರಿ ಬಿರಿಯೆ ದಿವಿಜ
ವ್ರಜ ಭಯಂಗೊಳೆ ಹೂಣೆ ಹೊಕ್ಕರಿ
ವಿಜಯನಿಟ್ಟಣಿಸಿದರೆ ಹಿಮ್ಮೆಟ್ಟಿದರೆ ಬಳಿಸಲಿಸಿ
ಸುಜನ ವಂದ್ಯನ ರಥವ ಹಿಡಿದನಿ
ಲಜನು ಮುಂಗೈಗೊಂಡು ಪಡೆ ಗಜ
ಬಜಿಸೆ ನಭಕೀಡಾಡಿದನು ಹಿಡಿ ಬುಗುರಿಯಂದದಲಿ ೧೩

ಗಗನದಲಿ ರಥ ಯೋಜನಾಂತಕೆ
ಚಿಗಿದು ಧರಣಿಯ ಮೇಲೆ ಬೀಳಲು
ನಗುತ ಕರಣವ ಹಾಯ್ಕಿ ಮಂಡಿಯೊಳಿರ್ದನಾ ದ್ರೋಣ
ಜಗದೊಳಾವಭ್ಯಾಸಿಯೋ ತಾ
ಳಿಗೆಯ ತಲ್ಲಣದೊಳಗೆ ನೆಗಹಿನ
ಸುಗಮ ಸಾಹಸನರರೆ ಮಝು ಭಾಪೆಂದುದುಭಯ ಬಲ ೧೪

ತೂಗಿ ಕೆಡೆದುದು ತೇರು ಹುಡಿ ಹುಡಿ
ಯಾಗಿ ಹೋದುದು ದ್ರೋಣ ಮನದನು
ರಾಗ ಮಿಗೆ ಮತ್ತೊಂದು ಹೊಸರಥದೊಳಗೆ ವೆಂಠಣಿಸಿ
ಹೋಗಬಿಡೆನಿನ್ನಲಜನ ತಲೆ
ವಾಗಿಸುವೆನಿನ್ನೆನುತ ಶಕಟದ
ಬಾಗಿಲಲಿ ಗಿರಿಯಂತೆ ನಿಂದನು ಸಮರಕನುವಾಗಿ ೧೫

ಕೊಲುವುದನುಚಿತವೆಂದು ಗಗನ
ಸ್ಥಳಕೆ ರಥವನು ಬಿಸುಡೆ ಯೋಜನ
ದಳವಿಯಲಿ ಲಂಘಿಸಿತು ಹಯತತಿ ಸೂತಜರು ಸಹಿತ
ಎಲೆಲೆ ಕಟಕಾಚಾರ್ಯನಕಟಾ
ಕೊಳುಗುಳದೊಳಪದೆಸೆಯ ಕಂಡನೊ
ಗೆಲಿದನೋ ರಿಪುವೆಂದುಲಿಯೆ ನಿಜಪಾಯದಳವಂದು ೧೬

ನಿಜವರೂಥದಲಂದು ಕೌರವ
ವಿಜಯ ಮಾರುತಿ ಹೊಕ್ಕು ರಿಪು ಭೂ
ಭುಂಜರನರೆಯಟ್ಟಿದನು ಬಹಳಿತ ಸಿಂಹನಾದದಲಿ
ತ್ರಿಜಗ ತಲ್ಲಣಿಸಿದುದು ವರ ವಾ
ರಿಜವಿಲೋಚನ ಕೇಳಿದನು ಪವ
ನಜನ ಪಡಿಬಲ ಬಂದುದೆಂದರುಹಿದನು ಪಾರ್ಥಂಗೆ ೧೭

ಭಕುತ ಮುಖ ದರ್ಪಣನು ಬಹ ಸಾ
ತ್ಯಕಿಯ ಕಂಡನು ಭೀಮಸೇನನ
ವಿಕಟ ಸಿಂಹಧ್ವನಿಯನಾಲಿಸಿ ಹಿಗ್ಗಿದನು ಪಾರ್ಥ
ವಿಕಳತನವನು ಮಾದು ಧರ್ಮಜ
ಸಂಕರ ಪರಿತೋಷದಲಿರಲು ರಿಪು
ನಿಕರ ಮುರಿದುದು ಪವನಪುತ್ರನ ರಥದ ಖುರ ಪುಟಕೆ ೧೮

ಅರಿಭಟರು ಪವನಜನನಾನುತ
ಮರಳುತುಂಬ್ಬರ ಬವರವನು ತಂ
ದರನೆಲೆಗೆ ಹಾಯ್ಕಿದರು ಕರ್ಣಾದಿಗಳ ಮುಂಬಿನಲಿ
ಜರಿದುದತಿರಥರಾಜಿ ಬಾಯಲಿ
ಕರಿಷ ಹಾಯ್ದುದು ಭೂಮಿಪಾಲರ
ಬಿರುದು ಮುದ್ರಿಸಿದವು ಸಮೀರಕುಮಾರನುರವಣೆಗೆ ೧೯

ಓಡುವುದು ಗರುವಾಯಿಯೇ ಭಯ
ಬೇಡ ಭೂಮಿಪರೆನ್ನ ತೇರಿನ
ಕೊಡೆ ಗಡಣಿಸಿ ಸಾಕು ತಾರೆನು ನಿಮಗೆ ಕಾಳೆಗವ
ನೋಡಿ ನಿಮಿಷಕೆ ಭೀಮನಡಗಿನ
ಲೂಡುವೆನು ರಣಭೂತವನು ಭಯ
ಬೇಡೆನುತ್ತನಿಲಜನ ರಥವನು ತರುಬಿದನು ಕರ್ಣ ೨೦

ಬಿಗಿದ ಹುಬ್ಬಿನ ಬಿಲ್ಲ ತೆಗಹಿನ
ಹೊಗರಲಗಿನುರವಣೆಯ ರಥದಲಿ
ಮುಗುಳ್ದ ಮುಂಡಿಯ ದೃಷ್ಟಿಯೋರೆಯ ಬಾಗಿದವಯವದ
ಅಗಿದು ಕಡುಗೋಪವನು ಬೆಸಲಹ
ನಗೆಯ ನಿರಿಗೆಯುಲರಿಯ ನುಂಗುವ
ಬಗೆಯ ಬಲುಗೈ ಕರ್ಣ ಮೂದಲಿಸಿದನು ಪವನಜನ ೨೧

ಸಾರೆಲವೊ ಸಾಯದೆ ವೃಥಾಹಂ
ಕಾರವೇತಕೆ ನುಗ್ಗ ಸದೆದ ಕ
ಠೋರ ಸಾಹಸವಿಲ್ಲಿ ಕೊಳ್ಳದು ಕರ್ಣ ತಾನೆನುತ
ಆರಿದ್ಯೆದಂಬಿನಲಿ ಪವನಕು
ಮಾರಕನನೆಸೆ ಮೇಘ ಘನ ಗಂ
ಭೀರರವದಲಿ ಭೀಮ ನುಡಿದನು ಭಾನುನಂದನನ ೨೨

ದೇವ ದಾನವ ಭಟರು ನುಗ್ಗೆಂ
ದಾವು ಬಗೆದಿಹೆವುಳಿದ ಮರ್ತ್ಯರು
ನೀವು ತಾವೇಸರ ಸಮರ್ಥರು ಕರ್ಣ ಗಳಹದಿರು
ಡಾವರಿಗತನವಾರ ಕೂಡೆ ವೃ
ಥಾ ವಿಲಾಸಿಗಳೆಲವೊ ಸುಭಟರೆ
ನೀವೆನುತ ಹದಿನೈದು ಶರದಿಂದೆಚ್ಚನಿನಸುತನ ೨೩

ಎಸಲು ಭೀಮನ ಬಾಣವನು ಖಂ
ಡಿಸಿದ ಮೂರಂಬಿನಲಿ ರವಿಸುತ
ನಸಮ ಸಾಹಸಿಯೆಚ್ಚಡೆಚ್ಚನು ಭೀಮ ಮರುಗಣೆಯ
ನಿಶಿತ ಶರವನು ಹತ್ತು ಶರದಲಿ
ಕುಸುರಿದರಿದನು ಕರ್ಣನಿಬ್ಬರ
ದೆಸೆಗೆ ದೇವಾನೀಕ ಮೆಚ್ಚಿತು ಭೂಪ ಕೇಳೆಂದ ೨೪

ತೋಳುವಲಕಿದಿರಿಲ್ಲ ಬಿನುಗು ನೃ
ಪಾಲನೆಲವೋ ಕರ್ಣ ಫಡ ಫಡ
ಮೇಳವಾದರೆ ಮೊಗೆವೆನರುಣಾಂಬುವನು ನಿನ್ನೊಡಲ
ಕೋಲ ಸುರಿ ಸುರಿಯೆನುತ ಕುರುಭೂ
ಪಾಲಕನ ಮದದಾನೆಯನು ಹೀ
ಹಾಳಿಗೆಡಿಸಿ ತುರಂಗ ರಥ ಸಾರಥಿಯ ಖಂಡಿಸಿದ ೨೫

ಉಡಿದು ರಥ ಸಾರಥಿಗಳವನಿಗೆ
ಕೆಡೆಯೆ ಕಾಲಾಳಾಗಿ ಭೀಮನ
ಬಿಡದೆ ಥಟ್ಟೈಸಿದನು ಶರನಿಕರದಲಿ ರವಿಸೂನು
ಕಡಿದು ಬಿಸುಡದೆ ಕರುಣಿಸಿದಡವ
ಗಡಿಸಿದನೆ ತಪ್ಪೇನೆನುತ ಕೈ
ಗಡಿಯ ಪವನಜನೆಚ್ಚು ಕರ್ಣನ ಧನುವ ಖಂಡಿಸಿದ ೨೬

ಕರದ ಬಿಲು ಕಳಚಿದರೆ ಖಾತಿಯೊ
ಳಿರದೆ ಹೊಸ ಹೊಂದೇರ ತರಿಸಲು
ತಿರುಗಿದನು ನಿಜಮೋಹರಕೆ ದುಗುಡದಲಿ ಕಲಿಕರ್ಣ
ತೆರಹು ಕೊಡದಿರಿ ಸೋತ ಕರ್ಣನ
ಹರಿಬವೆಮ್ಮದು ನೂಕು ನೂಕೆಂ
ದುರವಣಿಸಿದರು ಮತ್ತೆ ಕೌರವನನುಜರವಗಡಿಸಿ ೨೭

ಎಲವೊ ಕರ್ಣನ ಗೆಲಿದ ಗರ್ವವ
ಕಲಕುವೆವು ಫಡ ನಿಲ್ಲೆನುತ ಕೈ
ಚಳಕಿಗರು ಪೂರಾಯಚಾಪದ ಬೆರಳ ಕಿವಿಗಡಿಯ
ಬಲುಸರಳ ಸರಿವಳೆಯ ಸಾಹಸಿ
ಗಳುರವಣಿಸಿ ಕವಿದೆಸುತ ಬರೆ ಕಂ
ಡೆಲೆ ಮಿಡುಕನಾ ಭೀಮ ಮೂಗಿನ ಬೆರಳ ಬೆರಗಿನಲಿ ೨೮

ರಾಯನೊಡಹುಟ್ಟಿದರಲಾ ಪೂ
ರಾಯವಿವದಿರ ಕೈ ಮಹಾದೇ
ವಾಯುಧದ ಮಳೆಗರೆದರೈ ನಿಲಲರಿದು ನಮಗೆನುತ
ವಾಯುಸುತನಬ್ಬರಿಸೆ ಗಾಳಿಯ
ಘಾಯ ಮೇಘದ ಮೇಲೆ ಬಿದ್ದವೊ
ಲಾಯಿತೇನೆಂಬೆನು ಕುಮಾರರ ಹೊಯಿಲ ಬೆಳೆ ಸಿರಿಯ ೨೯

ಬಲ್ಲಡಗ್ನಿಸ್ತಂಭವನು ಸಿಡಿ
ಲಲ್ಲಿ ಮೇಳವೆ ಬಿನುಗುಗಳ ಗೆಲ
ಬಲ್ಲಡಿವರಿಗೆ ಭೀಮ ಸದರವೆ ಹೇಳಲೇನಿದನು
ಚೆಲ್ಲಿದರೆ ಬಳಿವರಿದು ಚೌಪಟ
ಮಲ್ಲ ಹೊಕ್ಕನು ಹೊಯ್ದು ಗದೆಯಲಿ
ಘಲ್ಲಿಸಿದನಸಿಯರೆದು ಕೊಂದನು ಕೌರವಾನುಜರ ೩೦

ವರ ಸುಲೋಚನ ಚಿತ್ರರಥ ದು
ರ್ಮರುಷಣ ಶತಾನೀಕ ನೀಲಾಂ
ಬರ ವಿವಿಂಶತಿ ಚಿತ್ರಸೇನರ ದೀರ್ಘಲೋಚನನ
ತರಿದು ತಿರುಗಿ ಸುಯೋಧನನ ಮೋ
ಹರಕೆ ಮೊಳಗಲು ಮತ್ತೆ ಬಲ ಸಂ
ವರಣೆಯಲಿ ಕೈಗೈದು ಭೀಮನ ಹಳಚಿದನು ಕರ್ಣ ೩೧

ಫಡ ತೊಲಗು ಪವಮಾನಸುತ ನಿ
ನ್ನೊಡಲನೀ ಶಾಕಿನಿಯ ಬಳಗಕೆ
ಬಡಿಸುವೆನು ಬದುಕುವರೆ ಹಿಮ್ಮೆಟ್ಟೆನುತ ಬಳಿಸಲಿಸೆ
ಕಡುನುಡಿಗೆ ಮೆಚ್ಚಿದನು ಹಿಂದಕೆ
ಮಿಡುಕುವವನೇ ಕರ್ಣನೀತನ
ಕಡುಹ ನೋಡು ವಿಶೋಕ ಎಂದನು ನಗುತ ಕಲಿಭೀಮ ೩೨

ತಗರು ತೊಲಗಿದಡೇನು ಬಲುಗಾ
ಳೆಗದ ಗಾಢಿಕೆ ಮೇಲೆ ಶೌರ್ಯದ
ಸೊಗಡ ಸೈರಿಸಲರಿಯೆ ಕಲಿತನದಂಗ ನಿನಗೇಕೆ
ಉಗಿ ಸರಳ ಬಿಲುಗಾರನಾದರೆ
ತೆಗೆದು ಕೈದುವ ಕೊಳ್ಳೆನುತ ತನಿ
ಹೊಗರುಗಣೆಗಳ ಸೂಸಿದನು ರವಿಸೂನು ಸವರದಲಿ ೩೩

ಸರಳ ಸರಳಲಿ ಕಡಿದನೆಚ್ಚರೆ
ತರಹರಿಸಿ ಮಗುಳೆಚ್ಚ ನೌಕಿದ
ಡುರವಣಿಸಿದನು ಸಿಂಹಗರ್ಜನದೊಡನೆ ಗರ್ಜಿಸಿದ
ತಿರುಗೆ ತಿರುಗಿದನೊತ್ತಲಗಿದೊ
ತ್ತರಿಸಿದನು ಭುಜಬಲಕೆ ಭುಜಬಲ
ಸರಿಯೆನಿಸಿ ಸಮ ಬೆಸನನೆಚ್ಚಾಡಿದನು ಕಲಿಕರ್ಣ ೩೪

ಬಳಲಿದವು ತೇಜಿಗಳು ಸಾರಥಿ
ಯಳುಕಿದನು ಶರಹತಿಗೆ ಭೀಮನ
ಬಲು ಪತಾಕೆ ತನುತ್ರ ರಥ ಕರ್ಣಾಸ್ತ್ರಮಯವಾಯ್ತು
ಹಿಳುಕ ಹೊದಿಸಿದನಖಿಲ ದೆಸೆಗಳ
ನಿಲುಕಲರಿದೆನೆ ನಿಮಿಷ ಮಾತ್ರಕೆ
ಕಳಚಿ ಕಳೆದನು ಭೀಮ ತೊಟ್ಟನು ಮತ್ತೆ ಮಾರ್ಗಣವ ೩೫

ತರಹರಿಸು ಬಿಲುಗಾರನಾದರೆ
ಪರಿಹರಿಸಿಕೊಳ್ಳೆನುತ ಪವನಜ
ಬಿರುಗಣೆಯಲಿರದೆಚ್ಚನಹಿತನ ಧನುವ ಸಾರಥಿಯ
ತುರಗವನು ಸಿಂಧವನು ಮಾರ್ಗಣ
ವೆರಡರಲಿ ನುಗ್ಗೊತ್ತೆ ರಥದಿಂ
ಧರಣಿಗಿಳಿದನು ಕರ್ಣ ಕೊಂಡನು ಹಲಗೆ ಖಂಡೆಯವ ೩೬

ಉಳಿಯಲೊಲೆದಿದಿರಾಗಿ ತಾಗಿದ
ಬಲುಕಣೆಯ ಕರವಾಳನಿಕ್ಕಡಿ
ಗಳೆದು ಹಲಗೆಯನೆಂಟು ಕಡಿ ಮಾಡಿದನು ಕಲಿಭೀಮ
ತೊಲಗು ಬಾಹಿರ ಮತ್ತೆ ಸಾರಥಿ
ಬಿಲು ರಥವನನುಮಾಡು ಪಾರ್ಥಗೆ
ಕಳದ ಮೀಸಲು ಕೊಲ್ಲೆನೆಲವೋ ಕರ್ಣ ಹೋಗೆಂದ ೩೭

ತೇರ ಚಾಚಲಿ ಬೇಗ ಬಲುಗೈ
ಸಾರಥಿಯ ಬರಹೇಳು ಹಿಂದಣ
ಸಾರಥಿಯ ದೆಸೆಯಿಂದ ಬಂದುದು ಕರ್ಣ ಸೋಲುವನೆ
ವೀರನಾವೆಡೆ ಶೌರ್ಯ ಪಾರಾ
ವಾರನಾವೆಡೆಯೆನುತ ಕೌರವ
ಧಾರುಣೀಪತಿ ಬೆಸಸಿದನು ತನ್ನನುಜ ದುರ್ಜಯಗೆ ೩೮

ಬಿಲುದುಡುಕಿ ರಿಪುಭಟನೊಡನೆ ಮುಂ
ಕೊಳಿಸಿದನು ದುರ್ಜಯನು ಹಿಮ್ಮೆ
ಟ್ಟೆಲವೊ ಪವನಜ ನಿಂದಡರಿವೆನು ನಿನ್ನೊಡಲನೆನುತ
ಒಲುಮೆಯೊಡಹುಟ್ಟಿದರ ಬಯಕೆಯ
ಸಲಿಸುವರೆ ನಾವಲ್ಲವೇ ಕುರು
ಕುಲ ಲಲಾಮರು ತಪ್ಪಿ ನುಡಿಯರೆನುತ್ತ ಮುಂಡಿಸಿದ ೩೯

ಕೀಲಿಸಿದನೆಂಟಂಬಿನಲಿ ತುರ
ಗಾಳಿಯನು ಸಾರಥಿಯನಾತನ
ಕೋಲ ಖಂಡಿಸಿ ಧನುವ ಕಡಿದನು ಮೂರುಬಾಣದಲಿ
ಹೋಳುಗಳೆದನು ಸಂಭಟನಿಟ್ಟೆಲು
ಮೂಳೆಯನು ಮುಂಕೊಂಡ ಬಿರುದರ
ಸೀಳಿದನು ಕರೆ ಮತ್ತೆ ಕರ್ಣನನೆನುತ ಬೊಬ್ಬಿರಿದ ೪೦

ರಥವ ಮೇಳೈಸಿದನು ಹೊಸ ಸಾ
ರಥಿಯು ಕರಸಿದನಾಹವದೊಳತಿ
ರಥಭಯಂಕರನೇರಿದನು ಬಲುಬಿಲ್ಲನೊದರಿಸುತ
ಪೃಥುವಿ ನೆಗ್ಗಲು ಸಂಭಟ ಸಾಗರ
ಮಥನ ಕರ್ಣನು ಭೀಮಸೇನನ
ರಥವನರಸುತ ಬಂದು ಪುನರಪಿ ಕಾಳೆಗವ ಹಿಡಿದ ೪೧

ಗೆಲಿದು ಹೋಗದಿರಿನ್ನು ಕರುಳನು
ಕಲಕುವೆನು ನಿಲ್ಲೆನುತ ರವಿಸುತ
ಸೆಳೆದು ಮುಷ್ಟಿಯ ಕೆನ್ನೆಗಡಿಯಂಬಿನಲಿ ಬರೆ ಕಂಡು
ಎಲವೊ ಲೋಕದ ಭಂಡ ನಿನೊಡ
ನುಲಿವವರು ನಾವಲ್ಲ ಮಲೆತರೆ
ತಲೆಯ ಕಾಯಿದು ಬಿಡುವೆನಲ್ಲದೆ ಕೊಲುವನಲ್ಲೆಂದ ೪೨

ಸರಳ ಸರಿಸೋನೆಯನು ಪವನಜ
ಗಿರಿಗೆ ಕರೆದುದು ಕರ್ಣ ಮೇಘದ
ಹೊರಳಿಯೇನೆಂಬೆನು ಮಹಾಸಂಗ್ರಾಮ ಸಂಭ್ರಮವ
ಸರಳಿನಲಿ ಧನುವಿನಲಿ ಗದೆಯಲಿ
ಕರಹತಿಯಲಹಿತಾಸ್ತ್ರವನು ಸಂ
ಹರಿಸಿ ಬೀಸಿತು ಭೀಮಮಾರುತ ಕರ್ಣಮೇಘದಲಿ ೪೩

ಧನುವನಿಕ್ಕಡಿಗಳೆದು ರಿಪು ಸೂ
ತನ ಶಿರವ ಹರಿಯೆಸಲು ಸಾರಥಿ
ತನವ ತಾನೇ ಮಾಡುತಿದಿರಾದನು ಕೃಪಾಣದಲಿ
ಕನಲಿ ಖಡ್ಗವ ಮುರಿಯೆಸಲು ಮು
ಮ್ಮೊನೆಯ ಶೂಲದಲಿಟ್ಟನಂತದ
ನನಿಲಸುತ ಖಂಡಿಸಲು ಮುರಿದನು ಮೋನದಲಿ ಕರ್ಣ ೪೪

ಪವನಜನ ಬಡಿಹೋರಿ ಹೋದನೆ
ರವಿ ಸುತನು ಹೋಗಲಿ ವೃಕೋದರ
ನವಯುವವ ಕೇಣಿಯನು ಕೊಟ್ಟೆವು ಬಾಣತತಿಗೆನುತ
ತವ ಕುಮಾರರು ಮತ್ತೆ ಬಹಳಾ
ಹವವ ಹೊಕ್ಕರು ಹಕ್ಕಲಾದವ
ರವಗಡಿಸಿ ಕೆಣಕಿದರು ರಿಪು ಕಲ್ಪಾಂತ ಭೈರವನ ೪೫

ವೀರರೆಂದೆನಿಸುವರು ತೊಡೆಹದ
ಶೌರಿಯಂದ ಸಿರಿವಂತರರಸುಕು
ಮಾರಕರು ನಿನ್ನವರು ಕೋಮಲ ಧೈರ್ಯರಾಹವಕೆ
ಮಾರಿ ಮುಖದವ ಕಠಿನಮನ ನಿ
ಸ್ಸಾರ ಹೃದಯನು ಭೀಮನವನೊಳು
ಹೋರಿದವರೇನಹರು ಕೇಳೈ ನಿನ್ನವರ ವಿಧಿಯ ೪೬

ಒಳಗೊಳಗೆ ತನ್ನಾಣೆ ಘೋಷಣೆ
ಸಲುವುದಲ್ಲದೆ ಸೊಡರು ಬೀದಿಗೆ
ಸುಳಿಯಲೆಲ್ಲಿಯು ಬೆಳಗು ತನ್ನುಳಿವಿಂಗೆ ಹೊಣೆಯಾರು
ಕೆಲಬಲದ ಮನ್ನೆಯರ ಹೊಯ್ಲ್ವ
ಗ್ಗಳಿಕೆ ಕೊಂಬುದೆ ಭೀಮನಲಿ ಕೈ
ಹೊಲಸುಗಾರನು ಹಿಂಡಿದನು ಕೌರವ ಸಹೋದರರ ೪೭

ದ್ರುಮ ವಿಕರ್ಣ ಸುಷೇಣ ಚಾರು
ಕ್ರಮ ವಿವಿತ್ಸುಕ ವಜ್ರಬಾಹುಕ
ದಮನ ದೀರ್ಘೋದರ ಮಹೋದರ ಕುಂಡದಾರುಕನ
ಯಮನ ಕೈಯೆಡೆಗೊಟ್ಟು ಘನ ವಿ
ಕ್ರಮದ ಸಿರಿ ಹೊದರೇಳೆ ಜಯುವಿ
ಕ್ರಮದೊಳಬ್ಬರಿಸಿದನು ನಿಷ್ಠುರ ಸಿಂಹನಾದದಲಿ ೪೮

ಇದೆ ಸಮೀರಕುಮಾರಕನ ಜಯ
ಮುದದ ಸಿಂಹಧ್ವನಿಯೆನುತ ಹಿ
ಗ್ಗಿದನು ಧರ್ಮಜನೊದರಿದವು ಗಂಭೀರಭೇರಿಗಳು
ಕದನ ಲಗ್ಗೆಯ ಕಹಳೆ ಬಹು ವಾ
ದ್ಯದ ಮಹಾದ್ಭುತರಭಸ ಮಿಗೆ ಹೊ
ಡಿದನು ಸನ್ನಾಹದಲಿ ಹೊಕ್ಕನು ಮತ್ತೆ ಕಲಿಕರ್ಣ ೪೯

ನವ ವರೂಥ ತುರಂಗ ಸಾರಥಿ
ಸವಗ ಮೊಚ್ಚೆಯದಲ್ಲಿ ಬಹಳಾ
ಹವದೊಳಗೆ ಮುಂಕೊಂಡು ಭೀಮನ ಹಳಚಿದನು ಕರ್ಣ
ತವಕ ಮಿಗಲೆಚ್ಚಾಡಿ ಪುನರಪಿ
ಪವನಜನ ಘಾಯದಲಿ ಸೋಲಿದು
ಬವರಮುಖದಲಿ ಹಿಂಗಿದನು ಹದಿನೆಂಟು ಸೂಳಿನಲಿ ೫೦

ಮುಳಿದು ಮೀಸೆಯ ಮುರಿದು ಹುಬ್ಬನು
ಬಲಿದು ದಳ್ಳುರಿದಿರುಳಸಕ್ಷಿಗ
ಳೊಳಗೆ ಪಸರಿಸಿ ಘುಡುಘುಡಿಸಿ ರೋಮಾಳಿ ಸೈ ನಿಮಿರೆ
ಹಲು ಮೊರೆದು ಹೊಗರಿಡುವ ಮೋರೆಯ
ಲಿಳಿವ ಬೆಮರನು ಬೆರಳ ಕೊನೆಯಲಿ
ಬಳಿದು ಭಾರ್ಗವದತ್ತಬಾಣಕೆ ನೀಡಿದನು ಕರವ ೫೧

ಎಲವೆಲವೊ ಕಲಿಯಾಗು ಮಾರುತಿ
ಗೆಲಿದನೆಂದಿರಬೇಡ ಸೋಲದ
ಗೆಲವಿನುದಯ ಮುಹೂರ್ತ ವಶ ಮೈಗುಡದೆ ಕಾದುವುದು
ಛಲವದುಳ್ಳಡೆ ಸಾಕು ನೀನೀ
ಹಲಗೆಯಲಿ ಹೊಕ್ಕಾಡಿ ಮರಳಿದು
ತಲೆವೆರಸಿ ನೀ ಹೋದಡಸ್ತ್ರತ್ಯಾಗ ತನಗೆಂದ ೫೨

ಉಂಟು ಶಿವ ಶಿವ ಹುಸಿಯು ನುಡಿ ನಿನ
ಗುಂಟೆ ಗೆಲ್ಲದೆ ಮಾಣೆ ಶೌರ್ಯದ
ಗಂಟು ಬಲುಹದ ಕಂಡು ಬಲ್ಲೆನು ಹಲವುಬಾರಿಯಲಿ
ಸುಂಟಿಗೆಯನಾಯ್ವೆನು ಕಣಾ ಬಲು
ಕಂಟಕವಲೇ ನರನ ನುಡಿ ನೀ
ನೆಂಟುಮುಡಿ ಗಳಹಿದರೆ ತಪ್ಪೇನೆಂದನಾ ಭೀಮ ೫೩

ಆದಡೆಲವೊ ದುರಾತ್ಮ ಮಾರುತಿ
ವಾದದಲಿ ಫಲವೇನು ಬಲ್ಲರೆ
ಕಾದುಕೊಳ್ಳಾ ಸಾಕು ಕಡುಸಾಹಸಿಕ ಗಡ ನೀನು
ಹೋದೆ ಹೋಗಿನ್ನೆನುತ ಕಣೆ ಹದಿ
ನೈದರಲಿ ಕೆಡಹಿದನು ತುರಗವ
ನೈದುಬಾಣದಲೆಚ್ಚು ಕಡಿದೀಡಾಡಿದನು ರಥವ ೫೪

ಎರಡು ಶರದಲಿ ಸಾರಥಿಯ ಹೇ
ರುರವನೆಸೆಯಲು ಘಾಯದಲಿ ತರ
ಹರಿಸದವ ಹಾಯ್ದನು ಯುಧಾಮನ್ಯುವಿನ ಹೊರೆಗಾಗಿ
ಮರಳಿ ಹತ್ತಂಬಿನಲಿ ಭೀಮನ
ಕೆರಳಿಚಿದನಾರಂಬಿನಲಿ ಹ
ನ್ನೆರಡರಲಿ ಹದಿನೆಂಟರಲಿ ಮಗುಳೆಚ್ಚು ಬೊಬ್ಬಿರಿದ ೫೫

ಶರಹತಿಗೆ ಸೆಡೆಯದೆ ವೃಕೋದರ
ನೆರಡು ಕವಲಂಬಿನಲಿ ಕರ್ಣನ
ಶಿರವನೆಚ್ಚಡೆ ತರಿದನೆಡೆಯಲಿ ಭಾನುಸುತ ನಗುತ
ತಿರುಹಿ ಶಕ್ತಿಯಲಿಟ್ಟರೆಡೆಯಲಿ
ತರಿದು ಭೀಮನ ಕರದ ಚಾಪವ
ನೆರಡುಕಡಿ ಮಾಡಿದನು ಬಳಿಯಲಿ ನೊಸಲನೊಡೆಯೆಚ್ಚ ೫೬

ವಾಯುಸುತ ಖಾತಿಯಲಿ ಹಲಗೆಯ
ಡಾಯುಧವ ಕೊಂಡರಿಭಟನ ಮೇ
ಲ್ವಾಯಿದಡೆ ಸಮ್ಮುಖವ ಬಿಟ್ಟನು ಧ್ವಜದ ಕಂಭದಲಿ
ಆಯುಧವ ಕೊಂಡೈದಿದಡೆ ಹಗೆ
ಮಾಯವಾದನು ಪೂತುರೆನುತ ಗ
ದಾಯುಧನು ಮರಳಿದರೆ ಕೈಯೊಡನೆದ್ದನಾ ಕರ್ಣ ೫೭

ಆರಿ ಬೊಬ್ಬಿರಿದೆಚ್ಚನನಿಲಕು
ಮಾರಕನ ಖಂಡೆಯವನೊಂದೇ
ಕೂರಲಗಿನಲಿ ಕಡಿದು ಬಿಸುಟನು ಹಿಡಿದ ಹಲಗೆಯನು
ಆರುಭಟೆಯಲಿ ಭೀಮ ಕಾವವ
ರಾರು ಕರೆಯಾ ಕರ್ಣ ಕೊಲುವಡ
ದಾರು ಫಡ ಹಿಂದಿಕ್ಕಿ ಕೊಂಬವರೆನುತ ಗರ್ಜಿಸಿದ ೫೮

ಮಡಿದ ಕರಿಗಳ ಕಾಯವನು ನಿ
ಟ್ಟೊಡಲ ತುರಗಂಗಳನು ಮುಗ್ಗಿದ
ಕೆಡೆದ ತೇರಿನ ಗಾಲಿಗಳ ಕೊಂಡಿಟ್ಟನಾ ಭೀಮ
ಎಡೆಯಲಾ ಕರಿಯೊಡಲನಾ ಹಯ
ದೊಡಲನಾ ರಥ ಚಕ್ರವನು ಕಡಿ
ಕಡಿದು ಬಿಸುಟನು ಹೊದ್ದಿದನು ಕಟ್ಟಳವಿಯಲಿ ಕರ್ಣ ೫೯

ಕೈದು ನೆರೆತೀರಿದರೆ ಹೆಣನೇ
ಕೈದುವಾದುವು ಪರಬಲಾಂತಕ
ಕೈದುಕಾರರ ಕೈಯ ಬಾಯಲಿ ಭೀಮ ಸಿಲುಕಿದೆಲಾ
ಕಾದುಕೊಳ್ಳನೆ ಕೃಷ್ಣ ನಿನ್ನಯ
ಮೈದುನನು ಗಡ ಮರೆಯ ಹೊಗು ಹೋ
ಗೈದೆಯಹಳೋ ವಿಧವೆಯೋ ಪಾಂಚಾಲಿ ಹೇಳೆಂದ ೬೦

ಬಿಲ್ಲ ಕೊಪ್ಪಿನಲಿರಿದು ಭೀಮನ
ಘುಲ್ಲಿಸಿದನೆಲವೆಲವೊ ಮಾರುತಿ
ಯುಳ್ಳಿಗಡ್ಡದ ಹರಿದಲೆಯ ರಣಮೂಢ ಸಿಲುಕಿದೆಲಾ
ಎಲ್ಲಿ ನಿನ್ನಾಟೋಪ ಹಿಂದಣ
ಹೊಳ್ಳುನುಡಿ ಹಾರಿದವೆ ಕೌರವ
ರೆಲ್ಲರನು ಸವರಿದೆಯೆಲಾ ಸಂದೇಹವೇನೆಂದ ೬೧

ಒಡೆಯ ದುರಿಯೋಧನನ ತೊಡೆಗಳ
ನುಡಿವೆ ದುಶ್ಶಾಸನನ ರಕುತವ
ಕುಡಿವೆನೆಂದುಬ್ಬಟೆಯ ಭಾಷೆಯಲಾ ಮಹಾದೇವ
ನುಡಿದ ನುಡಿವಳಿ ಸಂದುದೇ ನಿ
ಮ್ಮಡಿಗಳಿಗೆ ಕಲಿಭೀಮ ದುಗುಡವ
ಬಿಡು ಮರುಳೆ ತಲೆಗುತ್ತಲೇತಕೆಯೆಂದನಾ ಕರ್ಣ ೬೨

ಎಲ್ಲಿ ಷಡುರಸಮಯದ ಭೋಜನ
ವೆಲ್ಲಿ ಮಧುರ ಫಲೌಘದುಬ್ಬರ
ವೆಲ್ಲಿ ನಾನಾ ಭಕ್ಷ್ಯಗಿರಿಗಳು ಘೃತದ ಕಡಲುಗಳು
ಅಲ್ಲಿ ನಿನ್ನುರವಣೆಗಳೊಪ್ಪುವ
ದಲ್ಲದೀ ಸಂಗ್ರಾಮ ಮುಖದಲಿ
ಬಿಲ್ಲಹಬ್ಬದ ತುಷ್ಟಿ ನಿನಗೇಕೆಂದನಾ ಕರ್ಣ ೬೩

ತಾಯ ಮಾತನು ಮೀರಿ ನಿನ್ನನು
ನೋಯಿಸಿದೆನದೆ ಸಾಕು ಜೀವವ
ಕಾಯಿದೆನು ಬಿಟ್ಟೆನು ವೃಕೋದರ ಹೋಗು ಹೋಗೆನಲು
ವಾಯುಸುತ ಸಿಲುಕಿದನಲಾ ಕಾ
ಳಾಯಿತೆನುತಸುರಾರಿ ರಥವನು
ಹಾಯಿಸಲು ಮುರಿಯೆಚ್ಚು ಕರ್ಣನ ತೆಗೆಸಿದನು ಪಾರ್ಥ ೬೪

ಹದಿನಾಲ್ಕನೆಯ ಸಂಧಿ

ಸೂ. ಸಂಗರದೊಳಂದಹಿತಭಟ ಮಾ
ತಂಗ ಕಂಠೀರವನು ರಣದೊಳ
ಭಂಗ ಮುರಿದನು ಫಲುಗುಣನು ರಿಪುರಾಯ ಸೈಂಧವನ

ಚಿತ್ತವಿಸು ಧೃತರಾಷ್ಟ್ರ ರವಿಸುತ
ನಿತ್ತ ಮುರಿದನು ಸಾತ್ಯಕಿಯ ರಥ
ದತ್ತ ತಿರುಗಿದನನಿಲಸುತ ಭಾರಣೆಯ ದುಗುಡದಲಿ
ಇತ್ತ ಭೂರಿಶ್ರವನು ಭಾರಿಯ
ಹತ್ತು ಸಾವಿರ ರಥಸಹಿತ ಕೈ
ಗುತ್ತಿದನು ರಣವಿಜಯಲಕ್ಷ್ಮಿಯ ಲಲಿತಕಬರಿಯಲಿ ೧

ಒಂದು ಕಡೆಯಲಿ ಕರ್ಣ ಗುರುಸುತ
ರೊಂದು ದೆಸೆಯಲಿ ಶಲ್ಯ ಶಕುನಿಗ
ಳೊಂದು ದೆಸೆಯಲಿ ಭೂರಿ ಕೃತವರ್ಮಕ ಸುಯೋಧನರು
ಮುಂದುಗೆಡಿಸಿದರರ್ಜುನನನೀ
ಬಂದ ಭೂರಿಶ್ರವನ ನಿಲಿಸುವೆ
ನೆಂದು ಸಾತ್ಯಕಿ ಬಿಟ್ಟನಾತನ ಹೊರೆಗೆ ನಿಜರಥವ ೨

ಎಲವೆಲವೊ ಭೂರಿಶ್ರವನೆ ಫಡ
ಗೆಲಿದು ಹೋಗದಿರೆಲ್ಲಿ ಹೊಗುವಡೆ
ತಲೆವೆರಸಿ ಹೊಗಲೀಯೆನಿದಿರಾಗೆನುತ ಮೂದಲಿಸೆ
ಎಲವೊ ಸಾತ್ಯಕಿ ಸುಭಟ ಬಾಹಿರ
ಗಳಹದಿರು ದಿಟ ವೀರನೇ ಕೂ
ರಲಗಿನಲಿ ಮಾತಾಡು ಬರಿನುಡಿ ಭಂಡತನವೆಂದ ೩

ಆದಡಿದ ಕೊಳ್ಳೆನುತ ಸಾತ್ಯಕಿ
ಕೋದನಭ್ರವನಂಬಿನಲಿ ಬಲು
ಹಾದನ್ನೆ ಮರ್ಖು ಎನುತ ಕಡಿನು ಸೋಮದತ್ತಸುತ
ಕಾದುಕೊಳ್ಳೆನುತೆಚ್ಚನಂಬಿನ
ಬೀದಿವರಿ ಬಲುಹಾಯ್ದು ಖತಿಯಲಿ
ಕೈದುಕಾರರು ಮೆಚ್ಚಿಸಿದರಮರಾಸುರಾವಳಿಯ ೪

ದೂರದಲಿ ನಿಂದೊಬ್ಬರೊಬ್ಬರ
ನಾರು ಮಾಡುವುದೇನು ಸಾತ್ಯಕಿ
ಕೂರಸಿಯನುಗಿ ಬಿಸುಟು ಕಳೆ ಕೋದಂಡ ಮಾರ್ಗಣವ
ವೀರನಹಡಿದಿರಾಗೆನುತ ಬಹು
ಭಾರಣದ ಚಮ್ಮಟದ ಖಡುಗದ
ಪಾರಗದ ಪರಿಣತರು ಹೆಣಗಿದರುಬ್ಬಣಾಯತರು ೫

ನೆಲನ ತಗ್ಗಿನಲುಪ್ಪರದ ಮೆ
ಯ್ಯೊಲವಿನಲಿ ಪಾರಗದ ಬವರಿಯ
ಸುಳುಹಿನಲಿ ಚಮ್ಮಟದ ಪಯವಂಚನೆಯಲುಜ್ಜ್ವಟದ
ಬಲಿದ ದಂಡೆಯ ಮಸೆಯ ಬಯಸಿಕೆ
ಲುಳಿಯ ಮೈಗಳ ಲವಣೆಸಾರರು
ಕೊಳುಗಿಡಿಯ ಖಂಡೆಯದ ಖಣೆಕಟಿಲೆಸೆಯೆ ಕಾದಿದರು ೬

ತಳಿತ ಮಿಂಚಿನ ಮುರಿವುಗಳೊ ತನಿ
ಹೊಳಹುಗಳೊ ಖಂಡೆಯದ ಧಾರೆಯ
ಕೊಳುಗಿಡಿಯೊ ಖದ್ಯೋತರಾಸಿಯೊ ಹೇಳಲೇನದನು
ಖಳಿಕಟಿಲ ಬಿರುವೊಯಿಲೊ ಸಿಡಿಲಿನ
ಸುಳಿಯೊ ಮೈಮಸೆಯರುಣವಾರಿಯೊ
ಮಳೆಗಳಿಲ್ಲದ ಹೊನಲೊ ರಣದಲಿ ಚಿತ್ರವಾಯ್ತೆಂದ ೭

ಲುಳಿಯ ಪಯಪಾಡುಗಳ ಬವರಿಯ
ಸುಳಿವುಗಳ ಜಾರುಗಳ ಘಾಯದ
ಕಳವುಗಳ ಕೈಮೆಗಳ ವೋಡಾವೋಡಿಯುಬ್ಬಣದ
ಲಲಿತ ಚಿತ್ರದ ಚದುರ ಭಟರ
ವ್ವಳಿಸಿ ಹೊಯ್ದಾಡಿದರು ನೋಟಕ
ರುಲಿದುದಿಬ್ಬರ ಶ್ರಮದ ಶೌರ್ಯದ ವೆಗ್ಗಳೆಯತನಕೆ ೮

ಮಸೆಯ ಮೈಗಳೊಳೊರೆವುತಿರ್ದುವು
ಬಿಸಿರಕುತ ಮೊನೆಗುತ್ತುಗಳ ಕಿ
ಬ್ಬಸುರಿನಲಿ ಜೋಲಿದವು ಕರುಳುಗಳಾಹವದ ಭಟರ
ಮಸಕ ಮಸುಳದು ಮನದ ಖಾತಿಯ
ಮುಸುಡು ಮುರಿಯದು ಬಿಗಿದ ಹುಬ್ಬಿನ
ಬೆಸುಗೆ ಸಡಿಲದು ಭೂಪ ಭೂರಿಶ್ರವನ ಸಾತ್ಯಕಿಯ ೯

ಬರಬರಲು ರಿಪುಭಟನ ಹೊಯ್ಲುಗಳ
ಧರಧುರಕೆ ಕಲಿ ಸಾತ್ಯಕಿಯು ತರ
ಹರಣೆ ತಗ್ಗಿತು ಮಹಿಮೆ ಮುಗ್ಗಿತು ಮುರಿದುದಗ್ಗಳಿಕೆ
ಉರವಣಿಸಿ ಭೂರಿಶ್ರವನು ರಿಪು
ವರನ ಖಡುಗವ ಮುರಿಯ ಹೊಯ್ದು
ಬ್ಬರಿಸಿ ಕಡೆಗಾಲಿಂದ ಹೊಯ್ದನು ಹಾಯ್ದು ಮುಂದಲೆಗೆ ೧೦

ಕೊಡಹಿ ಕುಸುರಿದಡ್ಡ ಬೀಳಿಕಿ
ಮಡದಲುರೆ ಘಟ್ಟಿಸಿ ಕೃಪಾಣವ
ಜಡಿದು ಗಂಟಲ ಬಳಿಗೆ ಹೂಡಿದನರಿವುದಕೆ ಕೊರಳ
ಹಿಡಿದು ಮಹಾಸ್ತ್ರವ ನಿನ್ನ ಶಿಷ್ಯನ
ಕಡು ನಿರೋಧವ ನೋಡು ಫಲುಗುಣ
ನುಡಿಗೆ ತೆರಹಿಲ್ಲೆಂದು ಮುರರಿಪು ಜರೆದನರ್ಜುನನ ೧೧

ದೇವ ನಮ್ಮದು ಧರ್ಮಯುದ್ಧವಿ
ದಾವ ಹದನನು ಬೆಸಸಿದಿರಿ ತಲೆ
ಗಾವುದೇನರಿದಲ್ಲ ಮೊದಲಲಿ ನುಡಿದ ಸಮಯವನು
ಭಾವಿಸುವುದೆನೆ ಮುಗುಳುನಗೆಯಲಿ
ರಾವಣಾಂತಕನೆಂದನೆಲೆ ಮರು
ಳಾವ ನಿರುತದ ಧರ್ಮವಿದ್ದುದು ಕೌರವೇಂದ್ರನಲಿ ೧೨

ನೆರೆದ ಷಡುರಥರೊಬ್ಬ ಹಸುಳೆಯ
ಕೊರಳನರಿವಂದಾವ ಧರ್ಮದ
ನಿರುತವನು ನೀ ಕಂಡೆಯೆನಲುರಿ ಮಸಗಿತುದರದಲಿ
ಸರಳ ಕೆನ್ನೆಗೆ ಸೇದಿದನು ಸಂ
ಗರದ ಭೂರಿಶ್ರವನ ಖಡುಗದ
ಕರವ ಕತ್ತರಿಸಿದನು ತಲೆಗಾಯಿದನು ಸಾತ್ಯಕಿಯ ೧೩

ಭರದಲೆತ್ತಿದ ತೋಳು ಕಡಿವಡೆ
ದುರುಳಿತವನಿಗೆ ಸುರಿವ ರಕುತದ
ಸರಿವಿನಲಿ ನೆರೆ ನನೆದು ಭೂರಿಶ್ರವನು ನಸುನಗುತ
ಮುರಿದು ಪಾರ್ಥನ ನೋಡಿ ಪಾಪದ
ಬೆರಳನೊಲೆದನು ಲೇಸು ಲೇಸ
ಬ್ಬರದ ಬಿರುದಿನ ಧರ್ಮನಿಷ್ಠರು ಪಾಂಡುಸುತರೆಂದ ೧೪

ಆರು ಕೊಟ್ಟರು ಶರವನಿದ ಮಂದ
ನಾರಿಯೋ ನಿಮ್ಮಯ್ಯನಹ ಜಂ
ಭಾರಿಯೋ ಮೇಣ್ ಕೃಷ್ಣ ದ್ರೋಣರೊ ಹೇಳು ಹುಸಿಯದಿರು
ವೀರನಹೆಯೋ ಪಾರ್ಥ ನಿನ್ನವೊ
ಲಾರು ಬಿಲುಗಾರರು ಮಹಾಸ್ತ್ರವಿ
ದಾರು ಕಲಿಸಿದ ವಿದ್ಯವುಪಯೋಗಿಸಿತು ನಿನಗೆಂದ ೧೫

ಅರಿದೆನೀ ವಿದ್ಯವನು ಕೃಷ್ಣನೊ
ಳರಿದೆಯಾಗಲು ಬೇಕು ಕಪಟದ
ನೆರವಣಿಗೆಗಳನರಿಯರಿಂದ್ರ ದ್ರೋಣ ಶಂಕರರು
ಮರೆ ಮರೆಯಲಿರಿಗಾರನಸುರರ
ಮುರಿದನೆಂಬರು ಕುಹಕತಂತ್ರದ
ಹೊರಿಗೆವಾಳನ ಸಂಗದಲಿ ನೀವ್ ಕೆಟ್ಟಿರಕಟೆಂದ ೧೬

ಓಡಿ ಕೊಂದನು ಕಾಲಯವನನು
ಬೇಡಿ ಕೊಂದನು ಕೈಟಭನ ಕೈ
ಮಾಡಿ ಕೊಲಿಸಿದ ಮಾಗಧನನಭಿಮಾನಗೇಡುಗನ
ಕೂಡಿಕೊಂಡಿರಿ ಮೂರುಲೋಕದ
ಬೇಡರಿಯೆ ಬಾಹಿರನನೀ ಹರಿ
ಯಾಡಿಸಿದವೊಲಾಡಿ ಕೆಟ್ಟಿರಿ ಖಳರು ನೀವೆಂದ ೧೭

ಪೊಡವಿಯೊಳು ಯಾದವರು ಕ್ಷತ್ರಿಯ
ಗೆಡುಕರದರೊಳು ಹುಟ್ಟಿದನು ಕೊಲೆ
ಗಡಿಗ ಹಾವಿನ ಹುತ್ತದಲಿ ಹಾಮ್ಮೆಕ್ಕೆ ಬೆಳೆದಂತೆ
ನಡೆವಳಿಯ ನೋಡಿದರೆ ಲೋಗರ
ಮಡದಿಯರು ತನ್ನವರು ಠಕ್ಕಿನ
ಕಡಲು ಕೃಷ್ಣನ ನಂಬಲಿಹಪರವಿಲ್ಲ ನಿಮಗೆಂದ ೧೮

ಎಂದಡೆಂದನು ಪಾರ್ಥನೆಲವೋ
ಮಂದಮತಿ ನೀನೆಂದರಹುದೆ ಮು
ಕುಂದನನು ನಂಬಿದರಿಗಿಹಪರಸೌಖ್ಯಭಯವಿಲ್ಲ
ಇಂದು ನಾವ್ ಮಾಡಿದುದು ಹೊಲ್ಲೆಹ
ವೆಂದೆ ನೀನದನರಿಯೆ ಶಿಷ್ಯನ
ಕುಂದು ಹೆಚ್ಚುಗಳಾರದೆಂಬುದ ಹೇಳು ನೀನೆಂದ ೧೯

ಎನಗೆ ಸಾತ್ಯಕಿ ಕೋಲ ಮಗನಾ
ತನ ವಧೆಯನಾ ಕಾಣಲಾಗದು
ಮನಕೆ ಮತವೇ ನಮ್ಮ ಹರಿಬಕೆ ಬಂದು ಕಾದುವನ
ನಿನಗೆ ಕೊಡುವೆನೆ ನಮ್ಮ ಧರ್ಮವ
ಜನವರಿಯದೇ ಹೋಗು ಹೋಗೆನೆ
ಮನದೊಳಗೆ ನಗುತಿರ್ದನಾ ಭೂರಿಶ್ರವ ಕ್ಷಿತಿಪ ೨೦

ಎಲವೊ ಸಾತ್ಯಕಿ ಬದುಕಿದೈ ನರ
ನುಳುಹಿಕೊಂಡನು ಹೋಗೆನುತ ಹೆಡ
ತಲೆಯನೊದೆದನು ನಿಂದು ಬರಿಕೈ ಮುರಿದ ಗಜದಂತೆ
ಒಲೆವುತೈತಂದೊಂದು ರಣಮಂ
ಡಲದೊಳಗೆ ಪದ್ಮಾಸನವನನು
ಕೊಳಿಸಿ ಯೋಗಾರೂಢನಾದನು ವರಸಮಾಧಿಯಲಿ ೨೧

ತರಣಿಮಂಡಲದಲ್ಲಿ ದೃಷ್ಟಿಯ
ನಿರಿಸಿ ಬಹಿರಿಂದ್ರಿಯ ಬಳಕೆಯ
ಮುರಿದು ವೇದಾಂತದ ರಹಸ್ಯದ ವಸ್ತು ತಾನಾಗಿ
ಇರಲು ಸಾತ್ಯಕಿ ಕಂಡು ಖತಿಯು
ಬ್ಬರಿಸಿ ಕಿತ್ತ ಕಠಾರಿಯಲಿ ಹೊ
ಕ್ಕುರವಣಿಸಿ ಭೂರಿಶ್ರವನ ತುರುಬಿಂಗೆ ಲಾಗಿಸಿದ ೨೨

ಆಗದಾಗದು ಕಷ್ಟವಿದು ತೆಗೆ
ಬೇಗವೆನಲರ್ಜುನನ ಕೃಷ್ಣನ
ನಾಗಳವ ಕೈಕೊಳ್ಳದರಿದನು ಗೋಣನಾ ನೃಪನ
ಹೋಗು ಹೋಗೆಲೆ ಪಾಪಿ ಸುಕೃತವ
ನೀಗಿ ಹುಟ್ಟಿದೆ ರಾಜಋಷಿಯವ
ನೇಗಿದನು ನಿನಗೆನುತ ಬೈದುದು ನಿಖಿಳಪರಿವಾರ ೨೩

ಒಡಲನೊಡೆದಾ ಜ್ಯೋತಿ ಗಗನಕೆ
ನಡೆದುದಿತ್ತಲು ಸುರರು ಮರ್ತ್ಯರು
ಸುಡು ಸುಡೆಂದುದು ಸಾತ್ಯಕಿಯ ದುಷ್ಕರ್ಮವಾಸನೆಗೆ
ಹಿಡಿದ ದುಗುಡದಲರ್ಜುನನು ಮನ
ಮಿಡುಕಿದನು ಕುರುನೃಪರು ಶೋಕದ
ಕಡಲೊಳದ್ದರು ಬೈವುತಿದ್ದರು ಕೃಷ್ಣಫಲುಗುಣರ ೨೪

ಇತ್ತ ರವಿರಶ್ಮಿಗಳು ನೆರೆ ಕೆಂ
ಪೊತ್ತಿದವು ಸೈಂಧವನನೀಗೊ
ತ್ತೊತ್ತೆಯಲಿ ನೆಲೆ ಕಾಣಬಾರದು ಸಾಕು ದುಮ್ಮಾನ
ಇತ್ತ ನಿಜಭಾಷೆಗೆ ಪರಾಭವ
ಹತ್ತಿರಾಯಿತು ನರ ನಿದಾನಿಸೆ
ನುತ್ತ ಮುರರಿಪು ರಥವ ಬಿಟ್ಟನು ಕಡೆಯ ವೋಹರಕೆ ೨೫

ಕಾದಿರೈ ಷಡು ರಥರು ನೃಪತಿಗೆ
ಕಾದು ಕೊಡಿರೈ ಸೈಂಧವನನಿದು
ಕೈದುಕಾರರ ಠಾವು ಸಾಹಸಿಗರಿಗೆ ಸಮಯವಿದು
ಮೂದಲೆಗಳಿವು ಮುಟ್ಟುವಡೆ ಮುನಿ
ಸಾದಡೊಳ್ಳಿತು ನಿಪ್ಪಸರದಲಿ
ಕಾದುವಿರಲೈ ಕಾಣಲಹುದೆಂದೊರಲಿದನು ಪಾರ್ಥ ೨೬

ಜರಿದುದೀ ಬಲರಾಸಿ ಗಾಳಿಯ
ಹೊರಳಿಗೊಡ್ಡಿದ ಹೊಟ್ಟು ಹಾರುವು
ದರಿದೆ ಗಿರಿಗಳು ನೆಲನ ಬಿಟ್ಟುದನೇನ ಹೇಳುವೆನು
ಗುರುತನುಜ ಕೃಪ ಕರ್ಣ ಮಾದ್ರೇ
ಶ್ವರ ಸುಯೋಧನ ಚಿತ್ರಸೇನರು
ಮುರಿದು ತರಹರಿಸಿದರು ಸೂಚೀವ್ಯೂಹದಗ್ರದಲಿ ೨೭

ಹರಿಯ ಬೊಬ್ಬೆ ರಥಾಶ್ವದಬ್ಬರ
ನರನ ಬಿಲುಟಂಕಾರ ತೇರಿನ
ಧರಧುರದ ಚೀತ್ಕಾರ ಹನುಮನ ಸಿಂಹನಿರ್ಘೋಷ
ಅರಿಬಲವ ತಿವಿದುದು ಚತುರ್ಬಲ
ಹೊರಳಿಯೊಡೆದುದು ಸುಭಟರೆದೆ ಜ
ರ್ಝರಿತವಾದುದು ಪಾರ್ಥ ಹೊಕ್ಕನು ಸೈಂಧವನ ದಳವ ೨೮

ಅಳವಿಗೊಡಲಿ ಮಹಾರಥರು ಕೈ
ಕೊಳಲಿ ಸೈಂಧವ ನೃಪನನೊಂದರೆ
ಘಳಿಗೆ ಕಾಯ್ದರೆ ನಾವು ನೆರೆ ಕೊಂದವರು ಫಲುಗುಣನ
ಹೊಳಹುಗಳಿದುದು ಕಾಲವಿನ್ನರೆ
ಘಳಿಗೆ ಸೈರಿಸಿ ಶಿವ ಶಿವಾಯೆಂ
ದೊಳಗೊಳಗೆ ಮೂದಲಿಸುತಿರ್ದರು ಭಟರು ತಮ್ಮೊಳಗೆ ೨೯

ಧನುವನೊದರಿಸಿ ಸಕಲ ಸುಭಟರು
ಮನವ ಬಲಿದೊಗ್ಗಾಗಿ ಸರಳಿನ
ಜಿನುಗುವಳೆಯಲಿ ನಾದಿದರು ನಾರಾಯಣಾರ್ಜುನರ
ಅನಿಬರಂಬನು ಕಡಿದು ಗುರುನಂ
ದನನ ಕರ್ಣನ ಕೃಪನ ದುರಿಯೋ
ಧನನ ಮೆಯ್ಯಲಿ ಮೆತ್ತಿದನು ಮುಮ್ಮೊನೆಯ ಬೋಳೆಗಳ ೩೦

ಫಡಫಡರ್ಜುನ ಹೋಗು ಹೋಗಳ
ವಡದು ಸೈಂಧವನಳಿವು ಭಾಷೆಯ
ನಡಸಬಲ್ಲರೆ ಬೇಗ ಬೆಳಗಿಸು ಹವ್ಯವಾಹನನ
ಕಡಲ ಮಧ್ಯದ ಗಿರಿಗೆ ಸುರಪತಿ
ಕಡುಗಿ ಮಾಡುವುದೇನೆನುತ ಕೈ
ಗಡಿಯ ಬಿಲ್ಲಾಳುಗಳು ಬಿಗಿದರು ಸರಳಲಂಬರವ ೩೧

ದ್ಯುಮಣಿಯೊದೆದರೆ ತರಹರಿಸುವುದೆ
ತಿಮಿರ ರಾಜನ ದೇಹವೀ ವಿ
ಕ್ರಮ ದರಿದ್ರರಿಗಳುಕಿದರೆ ಬಳಿಕವ ಧನಂಜಯನೆ
ಸಮತಳಿಸಿ ಶರವಳೆಯ ಕರೆದು
ದ್ಭ್ರಮಿ ಮಹಾರಥ ಭಟರ ವಿಜಯದ
ಮಮತೆಗಳ ಮಾಣಿಸಿದನಂದಮಳಾಸ್ತ್ರಬೋಧೆಯಲಿ ೩೨

ನೊಂದು ಮರಳದೆ ಮುಸಗಿ ಸೂರ್ಯನ
ನಂದನನು ತಾಗಿದನು ಗುರುಸುತ
ಮುಂದುವರಿದನು ತಲೆ ಹರಿದರೆನ್ನಟ್ಟೆ ಕಲಿಯೆನುತ
ಇಂದಿನಲಿ ಮಹನವಮಿ ತಲೆಗಳಿ
ಗೆಂದು ಕವಿದರು ಸಕಲ ಭಟರರ
ವಿಂದಸಖ ಹೊದ್ದಿದನು ಮೆಲ್ಲನೆ ಪಶ್ಚಿಮಾಂಬುಧಿಯ ೩೩

ಮೇಲೆ ಬಿದ್ದುದು ಸೇನೆ ಸವೆಯದು
ನಾಳೆ ಪರಿಯಂತರ ಘಳಿಗೆಗಿನ
ನಾಳುವನು ಜಲಧಿಯಲಿ ಕಾಣೆನು ವೈರಿ ಸೈಂಧವನ
ಹೇಳಿ ಫಲವೇನಿನ್ನು ವಹ್ನಿ
ಜ್ವಾಲೆ ಕೊಳ್ಳಲಿ ದೇಹವನು ಸಾ
ಕೇಳು ಮುರಹರ ತೇರ ತಿರುಹಿನ್ನೆಂದನಾ ಪಾರ್ಥ ೩೪

ಸಲಿಸಬೇಹುದು ಭಕುತ ಮಾಡಿದ
ಛಲದ ಭಾಷೆಯನೆನುತ ರವಿಮಂ
ಡಲಕೆ ಮರೆಯೊಡ್ಡಿದನು ಮುರರಿಪು ವರಸುದರ್ಶನವ
ಕಳನೊಳಗೆ ಕತ್ತಲಿಸಿತಹಿತನ
ಕೊಲೆಗೆ ಕಾವಳ ಕವಿದವೋಲರೆ
ಘಳಿಗೆಯಲಿ ಸುಮ್ಮಾನ ಮುಸಗಿತು ಸಕಲ ಕುರುಬಲಕೆ ೩೫

ಸೆರಗ ಬೀಸಿದರಾರಿದರು ಬೊ
ಬ್ಬಿರಿದರುರು ಗಂಭೀರಭೇರಿಯ
ಬಿರುದನಿಗಳುಬ್ಬರಿಸಿದವು ಗಬ್ಬರಿಸಿದವು ನಭವ
ತೆರಹ ಕೊಡು ಕೊಡು ಭಾಷೆಕಾರನು
ಮೆರೆದು ಹೋಗಲಿ ವಹ್ನಿ ಕುಂಡದೊ
ಳೊರಗುವುದ ನೋಡುವೆವೆನುತ ತನಿಗೆದರಿತರಿಸೇನೆ ೩೬

ಹೊಲಬುದಪ್ಪಿದ ತಳಪಟದ ಹೆ
ಬ್ಬುಲಿಯವೊಲು ನಿನ್ನಾತ ಸಿಲುಕಿದ
ನಿಲುಕಿ ನೋಡಿದನೆಲ್ಲಿ ತೋರರ್ಜುನನನೆನಗೆನುತ
ಉಲಿಯೆ ಸೈಂಧವನಿತ್ತ ಪಾರ್ಥನ
ಮುಳಿದು ಜರೆದನು ಕೃಷ್ಣನಹಿತನ
ತಲೆಗೆ ಹರ ಹಿಡಿವಂಬ ತೊಡು ತೊಡು ಬೇಗ ಮಾಡೆಂದ ೩೭

ದೇವ ರವಿಯಸ್ತಮಿಸಿದನು ನೀ
ವಾವುದುಚಿತವ ಕಂಡಿರೆನೆ ನಿನ
ಗಾವ ಭಯ ಬೇಡಾಡಬಾರದು ತೊಡು ಮಹಾಶರವ
ಈ ವಿರೋಧಿಯ ಕೆಡಹು ಸೂರ್ಯನ
ನಾವು ತೋರಿಸಿ ಕೊಡುವೆವೆನೆ ಗಾಂ
ಡೀವದಲಿ ಹೂಡಿದನು ಫಲುಗುಣ ಪಾಶುಪತಶರವ ೩೮

ತೆಗೆಯೆ ಜಗ ಕಂಪಿಸಿತು ತಾರೆಗ
ಳೊಗಡಿಸಿತು ನಭ ಜಲಧಿ ರತ್ನಾ
ಳಿಗಳನೋಕರಿಸಿತು ಕುಲಾದ್ರಿಗಳೊಲೆದವೆಡಬಲಕೆ
ದಿಗಿಭತತಿ ನಡುನಡುಗೆ ತಳ
ವಾಸುಗಿ ಫಣಾಳಿಯ ಸೆಳೆಯೆ ಬಲುಸರ
ಳುಗಿದು ದಳ್ಳುರಿದಿರುಳ ಕಾರಿತು ಬೆಸಸು ಬೆಸಸೆನುತ ೩೯

ಬಲಿದು ಮಂಡಿಯನೂರಿ ಕೆನ್ನೆಗೆ
ಸೆಳೆದು ಮುಷ್ಟಿಯ ಪಾರ್ಥನಹಿತನ
ತಲೆಯನೆಚ್ಚನು ಗೋಣ ಕಡಿದುದು ಪಾಶುಪತ ಬಾಣ
ಹೊಳೆವ ಮಕುಟದ ವದನ ಗಗನಾಂ
ಗಳಕೆ ಚಿಮ್ಮಿತು ರಕುತಧಾರಾ
ವಳಿಯ ರಿಂಗಣವಾಯ್ತು ಮುಂಡದ ತಲೆಯ ಮಧ್ಯದಲಿ ೪೦

ಬೀಳು ಬೀಳಭಿಮನ್ಯುವಿನ ವಧೆ
ಬಾಳಲೀವುದೆ ನಿನ್ನನೆನುತು
ಬ್ಬಾಳುತನದಲಿ ಪಾರ್ಥ ಬೊಬ್ಬಿಡೆ ಕೃಷ್ಣ ಖಾತಿಯಲಿ
ಖೂಳ ಕೇಳೆಳೆಗವನ ತಲೆಯನು
ಬೀಳಿಕಿದನ ಕಪಾಲ ಸಾವಿರ
ಹೋಳಹುದು ತೊಡು ಪಾಪಿ ಬೇಗದಲಂಬ ಕಳುಹೆಂದ ೪೧

ಇವನ ತಂದೆಯ ಶಾಪವಾವವ
ನಿವನ ತಲೆಯನು ನೆಲಕೆ ಕೆಡಹುವ
ನವನ ಮಸ್ತಕ ಬಿರಿದು ಬೀಳಲಿಯೆಂದನೀ ತಲೆಯ
ಇವನ ತಂದೆಯ ಕೈಯೊಳಗೆ ಬೀ
ಳುವವುಪಾಯವ ಮಾಡು ನೀನೆನೆ
ದಿವಿಜಪತಿಸುತನಾ ಮಹಾಸ್ತ್ರಕೆ ಬೆಸಸಿದನು ಹದನ ೪೨

ತುಡುಕಿ ಖಂಡವ ಕಚ್ಚಿ ನಭದಲಿ
ಗಿಡಿಗ ಹಾಯ್ವಂದದಲಿ ತಲೆಯನು
ಹಿಡಿದು ಹಾಯ್ದುದು ಬಾಣ ವೃದ್ಧಕ್ಷತ್ರನಿದ್ದೆಡೆಗೆ
ಕುಡಿತೆಯೆರಡರೊಳರ್ಘ್ಯಜಲವನು
ಹಿಡಿದು ಹಾಯ್ಕುವ ಸಮಯದಲಿ ತಲೆ
ನಡುವೆ ಬಿದ್ದುದು ಅರ್ಘ್ಯಜಲ ನವರಕ್ತಮಯವಾಗೆ ೪೩

ಏನಿದದ್ಭುತವೆನುತ ತಲೆಯನು
ತಾನೆ ಕೊಡಹಿದನಂಜಲಿಯನದ
ನೇನನೆಂಬೆನು ಕೃಷ್ಣರಾಯನ ಮಂತ್ರಶಕ್ತಿಯನು
ಆ ನರೇಂದ್ರನ ತಲೆ ಸಹಸ್ರವಿ
ಧಾನದಲಿ ಬಿರಿದುದು ಸುಯೋಧನ
ಸೇನೆ ಹರಿದುದು ಜರಿದುದರಿಭಟ ಧೈರ್ಯಗಿರಿನಿಕರ ೪೪

ನಡುಗಿ ಸಂಗರ ಭೀತಿಯಲಿ ಬೆಂ
ಗೊಡುವ ನಾಯಕವಾಡಿಗಳ ವಂ
ಗಡವ ನೋಡುತ ಮರೆಯ ಚಕ್ರವ ತೆಗೆದನಸುರಾರಿ
ಪಡುವಲಿಳಿಯದ ರವಿಯ ಬಯ್ವುತ
ನಡೆದನಾ ಕುರುರಾಯನಿತ್ತಲು
ಹಿಡಿದ ಚೌರಿಗಳಾಡಿದವು ಪಾಂಡವರ ಸೇನೆಯಲಿ ೪೫

ದೈವ ಪೌರುಷದೊಳಗೆ ಶಿವ ಶಿವ
ದೈವ ಬಲವೇ ಬಲವಲಾ ನಿ
ರ್ದೈವರಂಗೈತಳಕೆ ಬಂದರೆ ಪರುಷ ಪಾಷಾಣ
ದೈವದೂರರು ಧರ್ಮಹೀನರು
ನೆಯ್ವ ನೆಯ್ಗೆಗಳೆನುತ ಮಿಗೆ ಬಿಸು
ಸುಯ್ವುತಿರ್ದರು ಕರ್ಣ ಕೃಪ ಗುರುನಂದನಾದಿಗಳು ೪೬

ಕಡಲ ಮೊರಹಿನ ಲಹರಿ ಲಘುವೀ
ಪಡೆಯನೊಡೆಯಲು ಯುಗಸಹಸ್ರದೊ
ಳೊಡೆಯಬಹುದೇ ದ್ರೋಣ ರಚಿಸಿದ ವ್ಯೂಹ ಪರ್ವತವ
ಒಡೆದು ಹೋಯಿತ್ತೊಡ್ಡು ಸೈಂಧವ
ನೊಡಲು ನೀಗಿತು ತಲೆಯನಕಟಾ
ತೊಡಗಿದೆವು ದೈವದಲಿ ಕಲಹವನೆಂದನಾ ಕರ್ಣ ೪೭

ಮಂನಿದು ಮಾಡುವುದೇನು ಕೃಷ್ಣನ
ನೆನಹು ಘನ ನಮ್ಮಸುವ ನಾವೀ
ಜನಪತಿಗೆ ಮಾರಿದೆವು ನಮಗೀ ಚಿಂತೆಯೇಕೆನುತ
ಇನಸುತಾದಿಗಳಿದ್ದರಿತ್ತಲು
ಮನದ ಹರುಷದ ಹರಹಿನಲಿ ಪಾ
ರ್ಥನ ರಥವ ತಿರುಹಿದನು ಗದುಗಿನ ವೀರನಾರಯಣ ೪೮

ಹದಿನೈದನೆಯ ಸಂಧಿ

ಸೂ. ರಾಯ ಕಟಕಾಚಾರ್ಯನೊಡ್ಡಿದ
ರಾಯ ಥಟ್ಟಿನೊಳಿರುಳು ಕೊಂದನು
ವಾಯುತನಯನ ತನುಜನಗ್ಗದ ದೈತ್ಯಕೋಟಿಗಳ

ಕೇಳು ಜನಮೇಜಯ ಧರಿತ್ರೀ
ಪಾಲ ಕೃಷ್ಣಾರ್ಜುನರು ಬರೆ ಭೂ
ಪಾಲನಂದಿದಿರಾಗಿ ಬಂದನು ಸಕಲ ದಳಸಹಿತ
ಹೇಳಲರಿಯೆನು ಹರುಷದುದಯುವ
ನಾಲಿ ಹೂಳಿದವಶ್ರುಜಲದಲಿ
ಮೇಲುವಾಯ್ದಪ್ಪಿದನು ದೇವನ ಪಾದಪಂಕಜವ ೧

ಮಾತುದೋರದು ಹೆಚ್ಚಿದಾನಂ
ದಾತಿರೇಕಕೆ ಚಿತ್ತ ನೆರೆಯದು
ಹೂತು ಹಿಗ್ಗುವ ಪುಳಕರಾಜಿಗೆ ದೇಹ ಕಿರಿದೆನುತ
ಕಾತರಿಸಿದನು ಮೇಲೆ ಮೇಲೆ ಮ
ಹೀತಳಾಧಿಪ ಮೈಮರೆಯೆ ತೆಗೆ
ದಾತನನು ತಕ್ಕೈಸಿದನು ಕಾರುಣ್ಯನಿಧಿ ನಗುತ ೨

ಫಲಿಸಿತರಸಾ ನಿನ್ನ ಭಾಗ್ಯದ
ಬೆಳಸು ನಿನ್ನೊಡವುಟ್ಟಿದನ ನುಡಿ
ಕಳಸಗಂಡುದು ಕದನವಿದು ಭಾರಾಂಕವುಳಿದರಿಗೆ
ಕಳಿದುದೊಂದಪಮೃತ್ಯುವೆನೆ ನೃಪ
ತಿಲಕ ನುಡಿದನು ನಿನ್ನ ಭಾಷೆಯ
ಬಲಿದೆ ನಿನ್ನಯ ಬಿರುದ ಸಲಿಸಿದೆ ನಮಗಿದೇನೆಂದ ೩

ತೆಗೆಸು ದಳವನು ಸಾಕು ಬರಿದೇ
ಹೊಗಳುತಿಹೆ ನೀ ನಮ್ಮನೀ ಕಾ
ಳಗದೊಳಳಿದುದು ಹಗೆಯೊಳೇಳಕ್ಷೋಹಿಣೀ ಸೇನೆ
ಬಗೆಯದಿರಿದರು ಭೀಮ ಪಾರ್ಥರು
ಜಗದೊಳದ್ಭುತ ವೀರರಿವರೆಂ
ದಗಧರನು ಪತಿಕರಿಸಿದನು ಪವನಜನ ಫಲುಗುಣನ ೪

ಇತ್ತ ದುಗುಡವ ಹಿಡಿದ ರಾಯನ
ಕೆತ್ತ ಮುಖವನು ಕಂಡು ಭಟರೆದೆ
ಹೊತ್ತಿದವು ಹೊಗೆದೋರಿದವು ಮೋರೆಗಳು ಪಟುಭಟರ
ಇತ್ತ ನೋಡವನೀಶ ಸೈಂಧವ
ನೆತ್ತಲಿಹನತ್ತಲು ಮುರಾರಿಯ
ತೆತ್ತಿಗರ ಕಳುಹಿಸುವೆನೆಂದನು ಖಾತಿಯಲಿ ಕರ್ಣ ೫

ಇನ್ನು ನೋಡಾದಡೆ ಕಿರೀಟಿಯ
ಬೆನ್ನಲುಗಿವೆನು ಕರುಳನರ್ಜುನ
ಗನ್ನಗತಕದಲರಿಯ ಹೊಯ್ದನು ಹಾಯ್ಕು ವೀಳೆಯವ
ನಿನ್ನ ಕಂಗಳ ಬರನ ಕಳೆವೆನು
ಬೆನ್ನಲಿರು ನೃಪ ನೋಡು ಚಿತ್ರವ
ನಿನ್ನು ತೋರುವೆನೆನುತ ಭಾಷೆಯ ಕೊಟ್ಟನಾ ಕರ್ಣ ೬

ಉಂಟು ಗರುಡನನೊಳ್ಳೆ ತುಡುಕುವ
ದುಂಟಲೇ ಲೋಕದಲಿ ರಾಯನ
ನಂಟರಿಷ್ಟರೊಳಧಿಕನಲ್ಲಾ ಕರ್ಣ ಕಿರುಕುಳನೆ
ಕಂಟಣಿಸಬೇಡಿನ್ನು ಭಾಷೆಗ
ಳುಂಟು ನಿನ್ನಲಿ ನಗುವರಾವ
ಲ್ಲೆಂಟುಮಡಿಯನು ಸೊರಹು ಸಾಕೆಂದನು ಕ ಪಾಚಾರ್ಯ ೭

ಗರುವರನು ಮಾನ್ಯರನು ರಣಧೀ
ರರನು ದೂರದಲಿರಿಸುವರು ಹ
ತ್ತಿರಕೆ ಕರೆವರು ಬಾಯಿಬಡಿಕರ ಜಗದ ಭಂಡರನು
ಅರಸುಗಳು ದುಶ್ಶೀಲರೆಂಬುದ
ನರಿಯದೇ ಜಗವಕಟ ಟೆಕ್ಕೆಯ
ಹರಳು ಗಡ ಕೌಸ್ತುಭಕೆ ಸರಿಯೆಂದನು ಕೃಪಾಚಾರ್ಯ ೮

ನೀವು ಮಾಡುವುದೇನು ರಣದಲಿ
ಕಾವೆವೆಂದಿರಿ ಸೈಂಧವನ ನಾ
ನಾವಿಧದ ವ್ಯೂಹದಲಿ ನಿಮ್ಮೀ ದ್ರೋಣನೇಗಿದನು
ತಾವು ಭಟರಾದರೆ ವಿಭಾಡಿಸಿ
ಹೇವಗೆಡಿಸುವುದುಚಿತ ಭಂಡರು
ತಾವು ಲೋಗರ ಚುನ್ನವಾಡುವರೆಂದನಾ ಕರ್ಣ ೯

ಎಲವೊ ಫಡ ಮಾವನ ವಿಭಾಡಿಸಿ
ಗಳಹುವೀ ನಾಲಗೆಯ ಕೀಳುವೆ
ನೆಲೆ ಮಹಾದೇವಿಲ್ಲಿ ಮೇಳವೆನುತ್ತ ಖಂಡೆಯುವ
ಸೆಳೆದು ರೆಝೊಂಪಿಸಿ ಗುರುತನುಜನ
ವ್ವಳಿಸಲುಗಿದನಡಾಯುಧವನ
ಗ್ಗಳೆಯ ರವಿಸುತ ಮೇಲುವಾಯ್ದನು ದ್ರೋಣನಂದನನ ೧೦

ಬೆಂದುದೊಳತೋಟಿಯಲಿ ಕೌರವ
ವೃಂದವಕಟಕಟೆನಲು ಜನವೈ
ತಂದು ನಿಂದನು ನಡುವೆ ಕೌರವರಾಯ ಖಾತಿಯಲಿ
ಇಂದಿನಾಹವ ಲೇಸು ಲೇಸಿದು
ಮುಂದಭಾಗ್ಯನು ತಾನು ಸಾಕಿ
ನ್ನೆಂದು ಮಾಡುವುದೇನು ನಿಮ್ಮೊಳು ಕದನ ಬೇಡೆಂದ ೧೧

ಹೇವವುಳ್ಳರೆ ಭೀಮ ಪಾರ್ಥರ
ನೀವು ಕೊಲುವುದು ಮೇಣು ರಣದಲಿ
ಸಾವುದಲ್ಲದೆ ಗರುವರೊಳತೋಟಿಯಲಿ ತೊಡಕುವರೆ
ಕಾವೆವೆಂದಿರಿ ಸೈಂಧವನ ಸುಭ
ಟಾವಳಿಯ ಮೂಗುಗಳನರ್ಜುನ
ದೇವ ಕೊಯ್ದನು ಸಾರಿ ನೀವೆಂದರಸ ಮಾಣಿಸಿದ ೧೨

ನೆರೆವಣಿಗೆಯುಳ್ಳರೆ ವಿರೋಧಿಯ
ನಿರಿವುದೋಲೆಯಕಾರತನವನು
ಮೆರೆವುದುಚಿತವಿದೇಕೆ ಡೊಂಬಿನ ಶೌರ್ಯವೊಳಗೊಳಗೆ
ಕಿರುಕುಳರು ನೀವಲ್ಲ ನಿಮ್ಮಲಿ
ಕೊರತೆಯಿಲ್ಲದು ನಮ್ಮ ಪುಣ್ಯದ
ಬರನ ದಿನ ನೀವೇನ ಮಾಡುವಿರೆಂದು ಬಿಸುಸುಯ್ದ ೧೩

ಖಾತಿಯೇಕೈ ಸೈಂಧವನ ಕಾ
ವಾತನಾರೈ ತ್ರಿಪುರದಹನದ
ಭೂತನಾಥನ ಬಾಣ ಬಂದುದು ನರನ ಗಾಂಡಿವಕೆ
ಆತನೆಚ್ಚದು ಪಾಶುಪತವದ
ನಾತುಕೊಂಬವರಾರು ಬರಿದೆ ಭ
ಟಾತಿಶಯವನು ಹುರುಳುಗೆಡಿಸಂವಿರೆಂದನಾ ದ್ರೋಣ ೧೪

ಒಂದು ಹರ ಹಿಡಿವಂಬು ಶಕ್ರನ
ದೊಂದು ಕೌಬೇರಾಗ್ನಿ ವಾಯುವ
ದೊಂದು ಪಾರ್ಥನ ಬತ್ತಳಿಕೆ ದಿವ್ಯಾಸ್ತ್ರ ತುಂಬಿಹವು
ಕೊಂದಡಲ್ಲದೆ ಮಾಣವವು ನಾ
ವೊಂದಕೊಬ್ಬರು ಗುರಿ ನಿದಾನಿಸ
ಲಿಂದು ನಮಗಳವಡದು ಜಯವಿಲ್ಲೆಂದನಾ ದ್ರೋಣ ೧೫

ಅರಸ ಮರುಳೈ ನೀನು ಸುರರನು
ಸರಕುಮಾಡನು ಸಕಲ ದೈವದ
ದೊರೆಯಲೇ ಹರನಾತನಸ್ತ್ರವನಾರು ತರುಬುವರು
ಹರನ ಶರವಿಲ್ಲಿನ್ನು ಹಗೆಗಳ
ನಿರುಳು ರಣದಲಿ ಹಿಂಡುವೆನು ಸಂ
ವರಿಸು ಕೈದೀವಿಗೆಯನೆಂದನು ದ್ರೋಣನುಬ್ಬಿನಲಿ ೧೬

ಛಾಯವಡೆದಾನೆಗಳ ಕೈ ಮ್ಕೊ
ನೋಯೆ ಕಾದಿದ ರಾಜಪುತ್ರರ
ನಾಯುಂಥದ ಮಳೆಗಳಲಿ ನನೆದ ಜವಾಯ್ಲ ತೇಜಿಗಳ
ಹಾಯಿದುರೆ ಸೊಪ್ಪಾದ ಶಕಟ ನಿ
ಕಾಯವನು ಪೂರಾಯದೇರಿನ
ನಾಯಕರ ಕರೆಕರೆದು ಬವರಕೆ ಕಳುಹಿದನು ದ್ರೋಣ ೧೭

ಜರಿದ ಜೋಡನು ನೆರೆ ಹರಿದ ಹ
ಕ್ಕರಿಕೆಗಳ ನುಗ್ಗಾದ ಗುಳವನು
ಬಿರಿದ ಸೀಸಕ ಬಾಹುರಕ್ಕೆಯ ಮುರಿದ ಬಲ್ಲೆಹದ
ಅರೆಗಡಿದ ಬಿಲ್ಲುಗಳ ನೆಗ್ಗಿದ
ಹರಿಗೆಯನು ಮುಕ್ಕಾದ ಕೈದುವ
ತರಿಸಿ ಕಳುಹಿಸುತಿರ್ದನತಿರಭಸದಲಿ ಕಲಿದ್ರೋಣ ೧೮

ಎಣಿಸಲರಿಯೆನು ಬಂಡಿಗಳು ಸಂ
ದಣಿಸಿದವು ಹಕ್ಕರಿಕೆಗಳ ಹ
ಲ್ಲಣದ ಕವಚದ ಸೀಸಕದ ಜೋಡುಗಳ ರೆಂಚೆಗಳ
ಮಣಿಮಯದ ಮೋಹಳದ ಹಿರಿಯು
ಬ್ಬಣದ ಸಬಳದ ಶೂಲ ಸುರಗಿಯ
ಕಣೆಯ ಹೊರೆ ಚಾಚಿದವು ಕಟಕಾಚಾರ್ಯನಿದಿರಿನಲಿ ೧೯

ಕರೆಕರೆದು ರಥಿಕರಿಗೆ ಮಾವು
ತರಿಗೆ ಕಾಲಾಳಿಂಗೆ ರಾವು
ತ್ತರಿಗೆ ಕೊಡಿಸಿದನವರವರಿಗವರಂಗದಾಯುಧವ
ತರಿಸಿ ಸಾದು ಜವಾದಿಯನು ಕ
ರ್ಪುರದ ವೀಳೆಯವುಡುಗೊರೆಗಳಲಿ
ಹಿರಿದು ಪತಿಕರಿಸಿದನು ಪರಿವಾರವನು ಕಲಿದ್ರೋಣ ೨೦

ಉರವಣಿಸುವುದು ಕೊಂಡ ಹಜ್ಜೆಗೆ
ಮುರಿಯಲಾಗದು ಶಸ್ತ್ರಧಾರಾ
ಪರಮತೀರ್ಥಸ್ನಾನ ತೊಳೆವುದು ಭವದ ಕಿಲ್ಬಿಷವ
ಹರಣದಲಿ ಕಕ್ಕುಲಿತೆ ಬೇಡು
ದ್ಧರಿಸುವುದು ಸತ್ಕುಲತೆಯನು ಸಂ
ವರಿಸುವುದು ಸದ್ಗತಿಯನೆಂದನು ದ್ರೋಣ ನಿಜಬಲಕೆ ೨೧

ಲಟಕಟಿಸಿತಾಹವಕೆ ರಾಯನ
ಕಟಕ ಸುಮ್ಮಾನದಲಿ ಮೊಳಗುವ
ಪಟಹ ಡಮರು ಮೃದಂಗ ಘನಗಂಭೀರ ಭೇರಿಗಳ
ಚಟುಳ ಕಹಳೆಯ ಗಜರು ಮಿಗಲು
ತ್ಕಟಿಸಿತಂಬುಜಭವನ ನಿರ್ಮಿತ
ಘಟ ಬಿರಿಯೆ ಬಿಗುಹಾಯ್ತು ದ್ರೋಣನ ಸಮರಸನ್ನಾಹ ೨೨

ನರನ ಕರೆ ಕರೆ ಸಿಂಧುರಾಜನ
ಹರಿಬವೆಮ್ಮದು ತಮ್ಮದೆಂದ
ಬ್ಬರಿಸಿ ನೂಕಿತು ಕದನಲಂಪಟರಾಗಿ ಪಟುಭಟರು
ಸರಿಸದಲಿ ಲಟಕಟಿಸಿ ಮೋಹರ
ಮರಳಿ ನಿಂದುದು ರಣಕೆ ರಜನೀ
ಚರರ ಥಟ್ಟಣೆ ಧಾತುಗೆಡಿಸಿತು ದಿಟ್ಟರುಬ್ಬಟೆಯ ೨೩

ಹಿಂದೆ ಸೆಳೆದುದು ವೈರಿ ಬಲ ಭಟ
ವೃಂದ ನಿಲಲಿ ಕಿರೀಟಿ ಭೀಮರ
ಕಂದುಗಾಬುದು ಲೋಕ ನಮ್ಮನು ತೆಗೆದು ಹಿಂಗಿದರೆ
ಬಂದ ಜಯವಕ್ಕುವುದು ರಜನಿಯು
ಕೊಂದೆವಾದರೆ ನಮಗೆ ಸರಿಯಿ
ಲ್ಲೆಂದು ಧೃಷ್ಟದ್ಯುಮ್ನ ಕರೆಸಿದನಖಿಳನಾಯಕರ ೨೪

ಸೋತ ಬಲ ಸಂವರಿಸಿಕೊಂಡುದು
ಪೂತುರೇ ರಣವೆಂಬುದೆಮ್ಮಯ
ಧಾತು ಕಲಿ ಮೂದಲಿಸಿ ಕರೆದರೆ ರಾಜ್ಯಸಿರಿಯೇಕೆ
ಭೀತಿ ಮನದಲಿ ಪೌರುಷಾಂಗದ
ಮಾತು ಮುಖದಲಿ ಮುರಿವು ಕಾಲಲಿ
ಬೂತುಗಳು ಕುರುವೀರರೆನುತಿದಿರಾದುದರಿಸೇನೆ ೨೫

ಇಳಿದುದೀ ಕಣನೊಳಗೆ ದಿಗುವು
ಡಲದ ಸಂಧ್ಯಾರಾಗವೆನೆ ಪರಿ
ದಳಿತ ಚತುರಂಗದಲಿ ಮಸಗಿದುದರುಣಜಲರಾಶಿ
ಕಲಿಗಳುಬ್ಬಿನ ರೋಷತಾಮಸ
ತುಳುಕಿತೆನೆ ದಿಗುವಳಯದಲಿ ಕುಡಿ
ವೆಳಗ ಕುಡಿ ಕುಡಿದಡರುತಿರ್ದುದು ತಿಮಿರಲತೆ ಜಗವ ೨೬

ಜಡಿವ ಖಡುಗದ ಕಿಡಿಗಳಲಿ ಬೇ
ಗಡೆಯನಾಂತುದು ಮಕುಟಬದ್ಧರ
ಮುಡಿಯ ರತ್ನಪ್ರಭೆಗಳಲಿ ಜರ್ಝರಿತ ತನುವಾಯ್ತು
ಗಡಣದಂಬಿನ ಮಸೆಯ ಬೆಳಗಿನೊ
ಳಡಸಿದಾಕ್ಷಣ ಮತ್ತೆ ನಿಮಿಷಕೆ
ಹೊಡಕರಿಸಿ ಹಬ್ಬಿದುದು ಮಬ್ಬಿನ ಧಾಳಿ ದೆಸೆದೆಸೆಗೆ ೨೭

ಖಳರ ಹೃದಯದ ಗರುಡಿ ಘೂಕಾ
ವಳಿಯ ನಯನಾಂಜನ ಧರಿತ್ರಿಯ
ನಳಿನಕೆರಗಿದ ತುಂಬಿ ಸುಭಟಸ್ವಾಂತ ಶಶಿ ರಾಹು
ಪ್ರಳಯ ತಿಮಿರದ ಬೀಜ ನೀಲಾ
ಚಳದ ಸಾಯುಜ್ಯವೊ ನಭೋಮಂ
ಡಲದೊಳದನೇವೊಗಳುವೆನು ಮಸಗಿತು ತಮಸ್ತೋಮ ೨೮

ದಳದ ಬೊಬ್ಬೆಯ ಸಿಡಿಲ ಬಲುಗ
ತ್ತಲೆಯ ಝಾಡಿಯ ಮುಗಿಲ ಮಿಗೆ ಹೊಳೆ
ಹೊಳೆವ ಮಹಿಪರ ಮಕುಟರತ್ನದ ಬಳ್ಳಿಮಿಂಚುಗಳ
ಬಲುಸರಿಯ ನಾರಾಚ ಜಾಳದ
ಮಳೆಯ ನೆತ್ತರ ಹೊನಲುಗಳ ರೌ
ಕುಳದ ಮಳೆಗಾಲದಲಿ ಹೆಚ್ಚಿತು ಭಟರ ಶೌರ್ಯಶಿಖಿ ೨೯

ಹೆಣಗಿ ಮಿಗೆ ತಲೆಯೊತ್ತಿ ಹೊಯ್ದರು
ಹಣಿದದಲಿ ತಮ್ಮೊಳಗೊಳಗೆ ಸಂ
ದಣಿಗಳಲಿ ಸೈಗರೆದರಂಬಿನ ಸಿರಿಯನುರವಣಿಸಿ
ರಣಮಹೀ ಸಂತಮಸ ಶಾಂತೇ
ಕ್ಷಣರು ದಿಗುಭ್ರಮೆಯಲಿ ಸ್ವಕೀಯ
ಕ್ಷಣನವನು ರಚಿಸಿದರು ರೌರವವಾಯ್ತು ರಾತ್ರಿಯಲಿ ೩೦

ಆರ ವಂಗಡದಾಳಿವನು ನೀ
ನಾರು ಹೆಸರೇನೆಂದು ಬಳಿಕ ವಿ
ಚಾರ ಮಿಗೆ ಹೊಯ್ದಾಡಿದರು ಕರೆಕರೆದು ಮೂದಲಿಸಿ
ಭಾರಿಸಿತು ಬಲುತಿಮಿರ ಬಲ ಸಂ
ಹಾರವನು ವಿವರಿಸುವನಾವನು
ಭೂರಿ ಭಟರಂಘವಣೆ ಬೀತುದು ಭೂಪ ಕೇಳೆಂದ ೩೧

ತೆಗೆಸು ಚೂಣಿಯ ಬಲವ ದೀವ
ಟ್ಟಿಗರ ಕರೆ ಕರೆ ತೈಲಪೂರ್ಣದ
ತೊಗಲ ಕುನಿಕಿಲ ಬಂಡಿ ಕವಿಯಲಿ ಕೋಟಿ ಸಂಖ್ಯೆಯಲಿ
ಬಿಗಿದ ಮಳವೆಯನೆಣ್ಣೆಗೊಪ್ಪರಿ
ಗೆಗಳೊಳದ್ದಲಿ ಗಳೆಗಳಲಿ ಸೀ
ರೆಗಳ ಸುತ್ತಲಿಯೆಂದು ಕೈವೀಸಿದನು ಕಲಿದ್ರೋಣ ೩೨

ಬೆಳಗಿದವು ಬೊಂಬಾಳ ದೀವಿಗೆ
ಬಲದೊಳಾನೆಗೆ ಹತ್ತು ರಥಿಕಾ
ವಳಿಗೆ ನಾಲುಕು ಹಯಕೆರಡು ಕಾಲಾಳಿಗೊಂದೊಂದು
ಬಲಸಮುದ್ರದೊಳೊಗೆದ ವಡಬಾ
ನಳನ ಝಳವೋ ಮೃತ್ಯುವಿನ ದೀ
ವಳಿಗೆಯಿರುಳೋ ತಿಳಿಯಲರಿದೆನೆ ಚಿತ್ರವಾಯ್ತೆಂದ ೩೩

ಬಗೆಯುಲರಿದಿದು ಗರ್ಭ ಬಲಿಯದೆ
ಹಗಲನೀದುದೊ ರಾತ್ರಿ ಕುಡಿಕುಡಿ
ದುಗುಳುತಿರ್ದುವು ತಿಮಿರವನು ಕರದೀಪ್ತಿಕಾಳಿಗಳು
ಹೊಗರುಗೆಟ್ಟುದು ಕುಮುದ ಕಮಳದ
ಬಿಗುಹು ಬಿಟ್ಟುದು ಚಕ್ರವಾಕದ
ತಗಹು ಕೆಟ್ಟುದು ಹೇಳೆನಲು ರಂಜಿಸಿತು ದೀಪಾಳಿ ೩೪

ತಿಮಿರವಡಗಿತು ಮನದ ರೋಷದ
ತಿಮಿರವಡಗದ ಮುನ್ನ ಭುಜವಿ
ಕ್ರಮದ ವಿತರಣೆಯುಳ್ಳಡವಸರವಿದು ನೃಪಾಲರಿಗೆ
ನಿಮನಿಮಗೆ ಮುಂಕೊಂಡು ವಂಶ
ಕ್ರಮ ಸಮಾಗತ ಕೀರ್ತಿಸತಿಯಲಿ
ಮಮತೆಗಳ ನೆರೆಮಾಡಿಯೆಂದನು ದ್ರೋಣ ನಿಜಬಲಕೆ ೩೫

ಮತ್ತೆ ಹೊಕ್ಕುದು ಭಟರಮಮು ದಿಗು
ಭಿತ್ತಿ ಬಿರಿಯಲು ವೊರೆವ ಭೇರಿಯ
ಕಿತ್ತು ನೆಲ ಹೊಡೆಮರಳೆ ವೊಳಗುವ ಪಟಹ ಡಿಂಡಿಮದ
ಹತ್ತು ಸಾವಿರ ನೃಪರು ರಿಪುಗಳ
ಮುತ್ತಿದರು ಮುಸುಕಿದರು ಮೆಯ್ಯಲಿ
ಮೆತ್ತಿದರು ಮೊನೆಗಣೆಗಳನು ಪಾಂಡವರ ಬಲದೊಳಗೆ ೩೬

ಆಕಟ ಘಡ ಕುನ್ನಿಗಳಿಗಸುರಾಂ
ತನಕ ಕಪಟದ ಮಂತ್ರವೇ ಬಾ
ಧಕವಿದಲ್ಲದೆ ನಿಮಗೆ ಸೋಲುವುದುಂಟೆ ಕುರುಸೇನೆ
ಸಕಲ ಸನ್ನಾಹದಲಿ ಯಾದವ
ನಿಕರ ಸಹಿತೀಯಿರುಳು ರಣದಲಿ
ಚಕಿತರಾದರೆ ಜೋಡಿಸೆನುತಿದಿರಾದನಾ ದ್ರೋಣ ೩೭

ತವಕ ತಗ್ಗಿತು ಭಟರ ತಾಳಿಗೆ
ಜವಳಿದೆಗೆದುದು ಮನಕೆ ಭೀತಿಯು
ಗವಸಣಿಗೆ ಘಾಡಿಸಿತು ಜಾಳಿಸಿತದಟರಪಸರಣ
ಸವೆದ ಶೌರ್ಯದ ಘಾಯ ಘಲ್ಲಿಸಿ
ತವಯುವದ ಮಡಮುರಿವ ಮೋಹರ
ದವನಿಪತಿಗಳ ನಿಲವ ನೋಡಿದನಸುರರಿಪು ನಗುತ ೩೮

ನಿಲ್ಲಿ ಭಯ ಬೇಡಾವ ರಣವಿದು
ತಲ್ಲಣಕೆ ತರುವಾಯೆ ದೀವಿಗೆ
ಪಲ್ಲವಿಸಿದರೆ ತಳಿತುದೇ ಭುಜಶೌರ್ಯ ಕುರುಬಲಕೆ
ಖುಲ್ಲರಾರೋ ಬಲವ ತಿರುಹಿದ
ರಿಲ್ಲಿ ನಿಲಲಂಜಿದರೆನುತ ಕರ
ಪಲ್ಲವವ ನೆಗಹಿದನು ಲಕ್ಷ್ಮೀಕಾಂತ ಕರುಣದಲಿ ೩೯

ಆವನೊಬ್ಬನ ಮಧುರವಚನ ಕೃ
ಪಾವಲೋಕನದಿಂದ ಶತ ಜ
ನ್ಮಾವಳಿಯ ಘನ ದುರಿತವಹ್ನಿಯ ಝಳಕೆ ಕಡೆಯುಹುದು
ದೇವರೀತನ ಲಲಿತವಚನಸು
ಧಾವಸೇಚನದಿಂದ ಭಟರುರೆ
ಜೀವಿಸುವುದೇನರಿದೆ ಕೇಳ್ ಜನಮೇಜಯಕ್ಷಿತಿಪ ೪೦

ಹಿಂಗಿದುದು ಭಯ ಕಂತದ ಸಂಸ
ರ್ವಾಂಗದಲಿ ಪಸರಿಸಿತು ಕಾಳೆಗ
ದಂಘವಣೆ ಹೊಗರೇರಿದುದು ವಿಕ್ರಮ ಛಡಾಳಿಸಿತು
ಹೊಂಗಿದರು ಹೊಂಪುಳಿಯ ಪುಳಕದ
ಮುಂಗುಡಿಯ ರೋಮಾಂಚನದ ರಣ
ರಂಗ ಧೀರರು ತರುಬಿ ನಿಂದರು ಮತ್ತೆ ಕಾಳೆಗವ ೪೧

ಭಟರು ಬಳಲಿದರಿಂದು ರಣವು
ತ್ಕಟವು ಧೀವಶಿಗಳು ಮಹಾರಥ
ರಟಕಟಿಸುತಿದೆ ಮತ್ತೆ ನಾವಿದನೇನ ಹೇಳುವೆವು
ಕುಟಿಲ ಭಾರದ್ವಾಜನಿವನು
ಬ್ಬಟ್ಟೆಗೆ ಮದ್ದರವೆನು ನಿಶಾಪರಿ
ಯಟನಪಟುಗಳು ಬರಲಿ ಕಾಳೆಗಕೆಂದನಸುರಾರಿ ೪೨

ಕರಸು ಧರ್ಮಜ ಕಲಿಘಟೋತ್ಕಚ
ನಿರುಳುಬವರಕೆ ನಿಲಲಿ ಸಾತ್ಯಕಿ
ನರ ವೃಕೋದರ ನಕುಲ ಸಹದೇವಾದಿಗಳಿಗರಿದು
ಇರುಳು ರಣದಾಯತವನವನೇ
ಹಿರಿದು ಬಲ್ಲನು ಗೆಲುವನೆನೆ ಮುರ
ಹರನ ನೇಮದಲನಿಲತನಯನ ತನಯನೈತಂದ ೪೩

ಜಡಿವ ಹಿರಿಯುಬ್ಬಣದ ಹೆಚ್ಚಿದ
ಮುಡುಹುಗಳ ಮುರಿದಲೆಯ ಚರಣದ
ತೊಡರ ಮೊಳಗಿನ ಬಾವುಲಿಗಳಲಿ ಘಣಘಣ ಧ್ವನಿಯ
ನಿಡಿಯೊಡಲ ಮುರಿಮೀಸೆಗಳ ಕೆಂ
ಪಡರ್ದ ಕಂಗಳ ಹೊಳೆವ ದಾಡೆಯ
ದಡಿಗ ದಾನವನವನಿ ಹಜ್ಜೆಗೆ ನೆಗ್ಗಲೈತಂದ ೪೪

ಏನು ಧರ್ಮಜ ಕರಸಿದೈ ಕುರು
ಸೇನೆ ಮಲೆತುದು ಬಿಡು ಬಿಡಾ ತಡ
ವೇನು ತಾ ವೀಳೆಯವನೆನುತೆಡಗಯ್ಯನರಳಿಚುತ
ದಾನವಾಮರರೊಳಗೆ ನಿನ್ನಯ
ಸೂನುವಿಗೆ ಸರಿಯಿಲ್ಲೆನಿಸಿ ನಿಲ
ಲಾನು ಬಲ್ಲೆನು ನೋಡೆನುತ ಬಿದಿರಿದನು ಖಂಡೆಯವ ೪೫

ಜಡಿದು ಝೊಂಪಿಸಿ ವೀಳೆಯವ ಕೊಂ
ಡೆಡದ ಕಯ್ಯಿಂದೆರಗಿ ಮದಮುಖ
ನೆಡಬಲನ ನೋಡಿದರೆ ರಕ್ಕಸಕೋಟಿ ಜೀಯೆನುತ
ಸಿಡಿಲ ಸೆರೆ ಬಿಟ್ಟಂತೆ ಭುಜವನು
ಹೊಡೆದು ಮುಂಚಿತು ದೈತ್ಯಬಲವುಲಿ
ದಡಿಯಿಡಲು ಮೇಲುಸುರು ಮಸಗಿತು ಫಣಿಪ ಕಮಠರಿಗೆ ೪೬

ಕಾಳರಾತ್ರಿಯ ಕಟಕವೋ ಮೇಣ್
ಕಾಲರುದ್ರನ ಪಡೆಯೊ ದಾನವ
ನಾಳಿನಗ್ಗಳಿಕೆಗಳ ಬಣ್ಣಿಸಬಲ್ಲ ಕವಿಯಾರು
ಆಳ ಬೋಳೈಸಿದನು ಕಪ್ಪುರ
ವೀಳೆಯವ ಹಾಯ್ಕಿದನು ಲೋಹದ
ಗಾಲಿ ಘೀಳಿಡೆ ರಥವನೇರಿದನನಿಲಸುತಸೂನು ೪೭

ಸಾಲು ಮಿಗೆ ಮೋಹರದೊಳಗೆ ಬೊಂ
ಬಾಳ ದೀವಿಗೆ ಬೆಳಗಿದವು ಶರ
ಜಾಳ ದೀಧಿತಿ ತೊಳಗಿದವು ರಕ್ಕಸರ ಕೈಗಳಲಿ
ಬಾಳ ಹೊಳಹನು ಜರೆದು ದಾಡೆಯ
ಥಾಳ ಮಿಗೆ ಗಜಗಲಿಸೆ ದಾನವ
ಕಾಳೆಗಕ್ಕನುವಾಗಿ ನಿಂದನು ಬಿಗಿದ ಬಿಲುದೆಗೆದು ೪೮

ಹಯಕೆ ಹಯ ರಥ ರಥಕೆ ಪಯದಳ
ಪಯದಳಕೆ ಗಜಸೇನೆ ಗಜಸೇ
ನೆಯಲಿ ಭಾಷೆಯ ಭಟರು ಭಾಷೆಯ ಭಟರ ಗಡಣದಲಿ
ನಿಯತ ಚಾತುರ್ಬಲವೆರಡು ನಿ
ರ್ಭಯದಲೊದಗಿತು ಮಕುಟಮಸ್ತಕ
ಮಯ ಮಹೀತಳವೆನಲು ಹಳಚಿದು ಹೊಯ್ದುದುಭಯಬಲ ೪೯

ಕೌರವನ ತಳತಂತ್ರ ಕಟಕಾ
ಚಾರಿಯನ ಕಾಹಿನಲಿ ರಿಪುಪರಿ
ವಾರ ನಿಂದುದು ಭೀಮಸೇನನ ಸುತನ ಬಳಸಿನಲಿ
ಆರಿದನು ಜಗ ನಡುಗೆ ಬೊಬ್ಬೆಯ
ಭಾರದಲಿ ವೈರಿಗಳ ಬಲಸಂ
ಹಾರ ರುದ್ರನು ಕಲಿಘಟೋತ್ಕಚ ಹೊಕ್ಕನಾಹವವ ೫೦

ಬೆಳೆದವೋ ಕೈಕಾಲು ನೀಲಾ
ಚಲಕೆ ಹೇಳೆನೆ ಮುಗಿಲ ತುಡುಕುವ
ತಲೆಯ ತೋಕೆಯ ತೋರಹತ್ತನ ಕಂಡು ಕುರುಸೇನೆ
ಕಳವಳಿಸಿದರು ಕಾಯದಲಿ ಕ
ಕ್ಕುಲಿತೆಗಾರರು ಕೈದೆಗೆದರ
ಗ್ಗಳೆಯನುರುಬೆಗೆ ಬೀಳುಕೊಟ್ಟರು ಭಟರು ಸೈರಣೆಯ ೫೧

ಏನ ಹೇಳುವೆನವರ ರಣಸು
ಮ್ಮಾನವನು ನಮ್ಮವರ ಮೊಗದು
ಮ್ಮಾನವನು ಪ್ರಥಮಪ್ರವೇಶದೊಳಾದುದೀ ಹದನು
ದಾನವರ ಥಟ್ಟಣೆಗೆ ನಿಲುವರ
ನಾನು ಕಾಣೆನು ದಿಟ್ಟತನದಲಿ
ತಾನೆ ನಿಂದನು ಕೌರವೇಂದ್ರನು ಸಕಲ ಬಲಸಹಿತ ೫೨

ಫಡ ನಿಶಾಚರ ಹೋಗು ಹೋಗಳ
ವಡದು ಕರೆ ನಿಮ್ಮಯ್ಯನನು ಹೇ
ರೊಡಲ ತೋರಿಸಿ ಬಲವ ಬೆದರಿಸಲಗ್ಗಳಿಕೆಯಹುದೇ
ಮಿಡುಕುವರೆ ಕರೆ ನಿಮ್ಮ ತೆತ್ತಿಗ
ನಡಗಲೇತಕೆ ಕೃಷ್ಣ ನಿಮಗಿ
ನ್ನೊಡಲ ಬಳಿನೆಳಲವಸಹಿತ ಬಾಯೆಂದು ಗರ್ಜಿಸಿದ ೫೩

ಮರಳು ಕೌರವ ಜಂಗಮ ಸ್ಥಾ
ವರದ ದೇಹಕೆ ನೆಳಲಹುದು ದಿನ
ಕರನ ದೇಹಕೆ ನೆಳಲು ಶ್ರುತವೊ ದೃಷ್ಟವೋ ನಿನಗೆ
ಸುರ ನಿಶಾಚರ ಮರ್ತ್ಯರೊಳು ತಾ
ನೆರವ ಬಯಸುವುದುಂಟೆ ಹರಿಯಂ
ತಿರಲಿ ಚೈತನ್ಯಾತ್ಮನಾತನ ಮಾತದೇಕೆಂದ ೫೪

ಹೆಣನನರಸುತ ರಕುತಪಾನಕೆ
ಸೆಣಸಿ ಶಾಕಿನಿ ಢಾಕಿನಿಯರೊಳು
ಹೆಣಗಿ ಗೆಲುವುದೆಯಾಯ್ತು ದಾನವವಿದ್ಯೆ ಜಗವರಿಯೆ
ರಣದೊಳಗ್ಗದ ಕೈದುಕಾರರ
ಕೆಣಕಿ ಗೆಲುವುದ ಕೇಳಿದರಿಯೆವು
ಹೆಣದಿನಿಹಿಗಳು ಹೇವ ಮಾರಿಗಳೆಂದನಾ ಭೂಪ ೫೫

ಬಯ್ಯಲರಿವೆ ದುರುಕ್ತಿ ಶರದಲಿ
ಮೆಯ್ಯನೆಸುವೆಯೊ ಮೇಣು ಮಾರ್ಗಣೆ
ಕಯ್ಯಲುಂಟೇ ನಿನಗೆ ಸಂಬಳವೇನು ಸಮರದಲಿ
ಅಯ್ಯನನು ಕರೆಯೆಂಬ ಬಾಯನು
ಕೊಯ್ಯಬೇಡಾ ಸಿಂಹಕೇಸರ
ದುಯ್ಯಲಾಡುವ ಗಜವ ನೋಡೆಂದುರುಬಿದನು ನೃಪನ ೫೬

ಎಸುತ ಹೊಕ್ಕನು ದಳ್ಳಿಸುವ ಹೊಸ
ಮಸೆಯ ಕಣೆ ಮುಕ್ಕುರುಕಿದವು ನಿ
ಪ್ಪಸರದಲಿ ನೃಪನೆಚ್ಚು ಕಾಣನು ಹರಿವನಾ ಕಣೆಗೆ
ಕುಸುರಿದರಿದವು ಜೋಡು ಸೀಸಕ
ಬೆಸುಗೆಯೊಡೆದುದು ಘಾಯದಲಿ ಮೈ
ಬಸಿಯೆ ಬಿರಿದುದು ಶೌರ್ಯ ಬಿಗಿದುದು ಭೀತಿ ಭೂಪತಿಗೆ ೫೭

ಅಕಟ ದೊರೆಯೋ ಸಿಕ್ಕಿದನು ಪಾ
ತಕರು ರಥಿಕರು ಶಿವ ಹಿಡಿಂಬಾ
ರ್ಭಕನಿಗೊಪ್ಪಿಸಿಕೊಟ್ಟು ಕೊಂದರು ದ್ರೋಣ ಕೃಪರೆನುತ
ಸಕಲ ಪರಿಚಾರಕರು ಮಂತ್ರಿ
ಪ್ರಕರವೊರಲಲು ಕೇಳಿ ಬದ್ಧ
ಭ್ರುಕುಟಿ ಭೀಷಣಮುಖರು ಮುಸಗಿತು ದೈತ್ಯಬಲಜಲಧಿ ೫೮

ಬಕನ ಮಕ್ಕಳು ಜಟನ ಕಿಮ್ಮೀ
ರಕನ ಸುತರು ಹಿಡಿಂಬತನುಜರು
ವೃಕ ಜರಾಸಂಧಾತ್ಮಜರು ಶಿಶುಪಾಲನಂದನರು
ಸಕಲ ಸನ್ನಾಹದಲಿ ದೈತ್ಯ
ಪ್ರಕರ ಹೊಕ್ಕುದು ರಾಯ ರಥಪಾ
ಲಕರು ಕವಿದರು ತುಡುಕಿದರು ರಣವನು ಘಟೋತ್ಕಚನ ೫೯

ಕೆಣಕಿದರಲಾ ರಣವ ರಕ್ಕಸ
ಬಣಗುಗಳು ಮರಳಿ ಪೂತು ಸಮರಾಂ
ಗಣದೊಳಗೆ ನಾವಾವ ಸದರವೊ ನೋಡಿರೈ ಭಟರು
ಸೆಣಸು ಗಡ ನಮ್ಮೊಡನೆ ಸಲೆ ಟೆಂ
ಠಣಿಸುವರು ಗಡ ಬವರಕೋಸುಗ
ಹೊಣಕೆ ಗಡ ನಮ್ಮೊಡನೆನುತ ಸಾರಥಿಯ ಕೈವೊಯ್ದ ೬೦

ಹೆಸರುಗೊಂಡರೆ ಕಿವಿಗಳಿಗೆ ಕ
ರ್ಕಶರು ರಕ್ಕಸರೆಂಬ ಹೆಸರಿದು
ನುಸಿಗಳೊಳಗಾಶ್ರಯಿಸಿ ಕೆಟ್ಟುದು ಶಿವ ಶಿವಾಯೆನುತ
ಹೊಸ ಮಸೆಯ ಹೊಗರಂಬುಗಳನೆ
ಬ್ಬಿಸಿದನುಬ್ಬಿಸಿದನು ವಿರೋಧಿಗ
ಳಸು ಸಮೀರಣನಿಂದ ನಿಜಭುಜ ವಿಕ್ರಮಾನಳನ ೬೧

ಓಡಲೀಯದೆ ಸದರಗೊಡುತ ವಿ
ಭಾಡಿಸುತ ಮೇಲಿಕ್ಕಿದರೆ ಕೈ
ಮಾಡಿದರೆ ಶರಹತಿಗೆ ದೇಹವ ಕೊಟ್ಟು ಸೈರಿಸುತ
ಖೇಡತನವನು ಬಿಡಿಸಿ ಸಲೆ ಕೊಂ
ಡಾಡಿ ಕಾದಿದನಸುರಜಾತಿಯೊ
ಳೋಡೆ ಪರಿಭವ ತನ್ನದೆಂಬ ಪದಸ್ತತನದಿಂದ ೬೨

ಎಸುಗೆಯೊಳ್ಳಿತಲಾಯುಧನ ಲಂ
ಬುಸನ ಪರಿ ತಪ್ಪಲ್ಲ ತಪ್ಪ
ಲ್ಲಸುರನಹೆಯೋ ಜಾಗು ಕಿಮ್ಮೀರಾತ್ಮಜಾಯೆನುತ
ಅಸಿ ಪರಶು ಪಟ್ಟಿಸ ಮುಸುಂಡಿ
ಪ್ರಸರ ಧಾರಾಪಾತದಲಿ ಮೈ
ಬಸಿಯೆ ರಕುತದ ಸಾರ ಸಾಲಿಡೆ ಬಲದೊಳೊಳಹೊಕ್ಕ ೬೩

ಉರು ತಿಮಿಂಗಿಳನಬುಧಿಯಲಿ ಡಾ
ವರಿಸುವುದು ಹುಲುಮೀನಿನಂತಿರ
ಲರಸ ಹೇಳುವುದೇನು ಮೊಗೆದನು ದೈತ್ಯ ಜಲನಿಧಿಯ
ಅರಿದ ಕೊರಳಿನ ಬಸಿವ ಬಂಬಲು
ಗರುಳ ಜರಿವ ಕಪಾಲದೊಗುನೆ
ತ್ತರ ರಣಾವನಿ ಕರೆವುತಿರ್ದುದು ರೌದ್ರಮಯರಸವ ೬೪

ಜಾಗು ದೈತ್ಯರ ರಭಸದಲಿ ಲೇ
ಸಾಗಿ ಕಾದಿದಿರೀಸು ನಮ್ಮಲಿ
ತಾಗಿ ನಿಂದವರಾರು ಕೆಚ್ಚುಳ್ಳವರು ಕಲಿತನದ
ಆಗಲಿನ್ನಾವುದು ನಮಗೆ ಕೈ
ಲಾಗು ನಿಮ್ಮಸುಗಳು ಶರೀರವ
ನೀಗಿ ಕಳೆಯಲಿ ಎಂದು ಬೊಬ್ಬಿರಿದೆಚ್ಚನತಿರಥರ ೬೫

ಸಿಡಿಲು ಮೊರೆದರೆ ಸರ್ಪನಂಜುವು
ದಡಗುವನೆ ಗರುಡನ ವೃಥಾ ಕೆಡೆ
ನುಡಿಯ ನುಡಿದರೆ ದಿಟ್ಟನೆಂಬರೆ ವೀರರಾದವರು
ಘಡ ಘಡೆನುತ ಬಕಾಸುರನ ಮಗ
ನಡಸಿದನು ಕೂರಂಬನಾತನ
ಕಡುಹ ಹೊಗಳುತ ಹೊಕ್ಕು ಹಿಡಿದನು ಬೀಸಿದನು ಖಳನ ೬೬

ರಥಚಯವ ನುಗ್ಗೊತ್ತಿದನು ಸಾ
ರಥಿಗಳನು ಸೀಳಿದನು ಸುಮಹಾ
ರಥರ ಬಿಂಕದ ಬಿಗುಹ ಮುರಿದನು ಹೊಕ್ಕು ಬೀದಿಯಲಿ
ಶಿಥಿಲವಾಯಿತು ವೈರಿಬಲವತಿ
ಮಥನವಾಯಿತು ದೈತ್ಯನೂಳಿಗ
ಪೃಥುವಿ ಲಘುತರವಾಯ್ತು ಫಣಿತಪನ ಕೊರಳು ಸೈನಿಮಿರೆ ೬೭

ಬರಸಿದನು ರಣದಲಿ ಹಿಡಿಂಬಾ
ಸುರನ ಮಕ್ಕಳ ಚೈದ್ಯ ಮಾಗಧ
ನರಕ ಕಿಮ್ಮೀರಕ ಜಟಾಸುರಸೂನು ಸಂತತಿಯ
ಬರಲಿ ಕರ್ಣ ದ್ರೋಣರುಳಿದೀ
ಜರಡ ಜೋಡಿಸಬೇಡ ಭೀಮನ
ನರನ ಬಯಸುವರೆನ್ನೊಡನೆ ಕೈಮಾಡಹೇಳೆಂದ ೬೮

ಎನಲು ಕವಿದುದು ಸೇನೆ ಕಂಗನೆ
ಗನಲಿ ಕರ್ಣ ದ್ರೋಣರಿಗೆ ನೀ
ನೆನಿತರವ ಘಡ ಬಾಯಿಬಡುಕನು ಭೀಮಸುತನೆನುತ
ತನತನಗೆ ಕಾಲಾಳು ಮೇಲಾ
ಳನುಪಮಿತರೌಕಿದರು ಚಾಪ
ಧ್ವನಿಯೊಳಗೆ ನೆರೆ ಮುಳುಗೆ ಬಹುವಿಧವಾದ್ಯ ನಿರ್ಘೋಷ ೬೯

ಆಳಹಿರಿ ನಿಮಗಂಜುವೆನು ಕಾ
ಲಾಳ ಹೊಯ್ಯೆನು ಕುದುರೆಕಾರರು
ಮೇಲುವಾಯಲಿ ರಥಿಕರೊಡೆ ಹಾಯಿಸಲಿ ತೇರುಗಳ
ತೂಳಿಸಲಿ ಗಜದಳವನವರಿಗೆ
ಕೋಲ ತೊಡಚುವನಲ್ಲ ನೆರೆ ಹೀ
ಹಾಳಿಯುಳ್ಳರೆ ಬರಲಿ ಕರ್ಣ ದ್ರೋಣ ಕೃಪರೆನುತ ೭೦

ಹಲಬರಸುರರು ಮಡಿದರಿವನ
ಗ್ಗಳೆಯನಿರುಳಿನ ಬವರದಾಯತ
ತಿಳಿವುದೀತಂಗೆನುತಲಾ ದ್ರೋಣಾದಿ ನಾಯಕರು
ಅಳುಕಿದರು ಬಳಿಕೇನು ಭಕುತಿಯ
ಲೊಲಿಸಿದರಲ್ಲೈ ಪಾಂಡವರು ಯದು
ಕುಲಲಲಾಮನನಮಳ ಗದುಗಿನ ವೀರನರಯಣನ ೭೧

ಹದಿನಾರನೆಯ ಸಂಧಿ

ಸೂ. ಚಂಡಬಲ ಕುರುಪತಿಗೆ ಮಲೆವರ
ಗಂಡನಿರುಳಿನ ಕಾಳೆಗದೊಳು
ದ್ದಂಡಭಟ ಕಲಿಕರ್ಣ ಕೊಂದನು ಭೀಮನಂದನನ

ಕೇಳು ಧೃತರಾಷ್ಟ್ರಾವನಿಪ ದೊರೆ
ಯಾಳನರಸುತ ಹೊಕ್ಕು ಸೂಠಿಯೊ
ಳಾಳುಕುದುರೆಯ ಥಟ್ಟನಿಬ್ಬಗಿ ಮಾಡಿ ದಳವುಳಿಸಿ
ಕೋಲ ತೊಡಚೈ ಕರ್ಣ ಕುರುಭೂ
ಪಾಲ ಕೈದುವ ಹಿಡಿ ಕೃಪಾದಿಗ
ಳೇಳಿ ಸಮ್ಮುಖವಾಗೆನುತ ಕೈಮಾಡಿ ಬೊಬ್ಬಿರಿದ ೧

ಚೆಲ್ಲಿತರಿಬಲಜಲಧಿ ಭಟರ
ಲ್ಲಲ್ಲಿ ಮುಕ್ಕುರುಕಿದರು ಸಬಳದ
ಸೆಲ್ಲೆಹದ ತೋಮರದ ಚಕ್ರದ ಸರಿಯ ಸೈಗರೆದು
ಘಲ್ಲಿಸಿದವಾನೆಗಳು ತೇರಿನ
ಬಿಲ್ಲವರು ತುಡುಕಿದರು ಕಂಬುಗೆ
ಯಲ್ಲಿ ಖರ ಕುಣಿದಾಡೆ ಹೊಕ್ಕರು ರಾಯರಾವುತರು ೨

ಎಡಬಲದಿ ಹಿಂದಿದಿರಿನಲಿ ಕೆಲ
ಕಡೆಯ ದಿಕ್ಕಿನೊಳೌಕಿದರು ಬಲು
ಗಡಲ ಕಡೆಹದ ಗಿರಿಯನಬುಧಿಯ ತೆರೆಗಳೊದೆವಂತೆ
ಕೊಡಹಿದರೆ ಕಟ್ಟಿರುಹೆಗಳು ಬೆಂ
ಬಿಡದೆ ಭುಜಗನನಳಲಿಸುವವೋ
ಲಡಸಿ ತಲೆಯೊತ್ತಿದರು ಬೀಳುವ ಹೆಣನನೊಡಮೆಟ್ಟಿ ೩

ಹೊಕ್ಕ ಸುಭಟರು ಮರಳದಿರಿ ಖಳ
ಸಿಕ್ಕಿದನು ಸಿಕ್ಕಿದನು ಚಲಿಸುವ
ಚುಕ್ಕಿಗರ ಹೊಯ್ ಬೀಳಗುತ್ತೆನುತರಸನುಬ್ಬರಿಸೆ
ಹೊಕ್ಕು ತಿವಿದರು ತೀಡಿ ಹರಿಗೆಯು
ನಿಕ್ಕಿ ನಿಂದರು ತಮುತಮಗೆ ಮೇ
ಲಿಕ್ಕಿದರು ತೆರೆ ಮುರಿಯೆ ಬಳಿದೆರೆ ಮುಸಗಿ ಕವಿವಂತೆ ೪

ಅಗಡು ದಾನವನಿವನು ಕಡ್ಡಿಗೆ
ಬಗೆವನೇ ಸಾಗರವನರವ
ಟ್ಟಿಗೆಯನಿಟ್ಟರೆ ವಡಬನಲ್ಲಾ ನೀರ ಕುಡಿವವನು
ಹೊಗೆದುದೈ ಹೆಚ್ಚಾಳುಗಳ ನಗೆ
ಮೊಗವು ಮೋಡಾಮೋಡಿಯಲಿ ಕೈ
ಮಗುಚಿ ಕಳೆದನು ನಿಮಿಷದಲಿ ಹೇರಾಳ ರಾಶಿಗಳ ೫

ಕೆಲರ ನುಂಗಿದನೊದೆದು ಕೊಂದನು
ಕೆಲಬರನು ಹೊರಕೈಯ್ಯ ಹೊಯಿಲಲಿ
ಕೆಲಬರನು ಧನುವಿನಲಿ ಗದೆಯಲಿ ಹೊಯ್ದು ಕೆಲಕೆಲರ
ಕಲಕಿದನು ಬಲಜಲಧಿಯನು ಮೇ
ಲುಲಿದು ಕವಿದುದು ಮತ್ತೆ ಹೆಣನನು
ತುಳಿದು ಮುಗ್ಗಿತು ಮೇಲೆ ಬಿದ್ದುದು ಮುಸುಕಿತರಿಭಟನ ೬

ಪೂತುರೇ ಕುರುಸೈನಿಕವಸಂ
ಖ್ಯಾತವೆಂದಿಗೆ ಸವೆವುದೋ ಕೈ
ಸೋತವೇ ಹರ ಕೊಲುವೆನೆನುತಮುರಾರಿ ಚಿಂತಿಸಿದ
ಈತಗಳಿಗಿದು ಮದ್ದೆನುತ ಮಾ
ಯಾತಿಶಯ ಯುದ್ಧದಲಿ ಬಲಸಂ
ಘಾತವನು ಬೆದರಿಸಿದನದನೇವಣ್ಣಿಸುವೆನೆಂದ ೭

ಮಾಯದದಲಿ ಹುಲಿಯಾಗಿ ಗರ್ಜಿಸಿ
ಹಾಯಿದನು ಕಲಿಸಿಂಹವಾಗಿ ಗ
ದಾಯುಧದಲಪ್ಪಳಿಸಿದನು ಭೈರವನ ರೂಪಾಗಿ
ಬಾಯಲಡಸಿದನಹಿತರನು ದಂ
ಡಾಯುಧದ ನಿಲವಿನಲಿ ಸುಭಟರ
ದಾಯುಗೆಡಿಸಿದನೊಂದು ನಿಮಿಷದೊಳೊರಸಿದನು ಬಲವ ೮

ಬೀಳಹೊಯ್ದನು ಬಿರುದರನು ಬಿರು
ಗಾಳಿಯಾಗಿ ವರೂಥಚಯವನು
ಕಾಳುಕಿಚ್ಚಾಗುರುಹಿದನು ಫಣಿಯಾಗಿ ತುಡುಕಿದನು
ಮೇಲುಗವಿದನು ಜಲಧಿಯಾಗಿ ನೃ
ಪಾಲನಿಕರದೊಳುರುಳಿದನು ಗಿರಿ
ಜಾಳವಾಗಿ ಘಟೋತ್ಕಚನು ಘಲ್ಲಿಸಿದನತಿರಥರ ೯

ಎರಗಿದನು ಸಿಡಿಲಾಗಿ ಕಂಗಳೊ
ಳಿರುಕಿದನು ಮಿಂಚಾಗಿ ಮಳೆಯನು
ಕರೆದು ನಾದಿದನಾತಪತ್ರ ತನುತ್ರ ಸೀಸಕವ
ತುರುಕಿದನು ಹೊಗೆಯಾಗಿ ಮಿಗೆ ಬೊ
ಬ್ಬಿರಿದನೊಂದೆಡೆಯಲ್ಲಿ ಸುಭಟರ
ನೊರಲಿಸಿದನೊಂದೆಡೆಯಲೇನೆಂಬೆನು ಮಹಾರಣವ ೧೦

ಸುರಿದ ಕರುಳ್ಗಳ ಸಿಡಿದ ಹಲುಗಳ
ಜರಿದ ತಲೆಗಳ ಹಾಯ್ದ ಮೂಳೆಯ
ಹರಿದ ನರವಿನ ಬಿಗಿದ ಹುಬ್ಬಿನ ಬಿಟ್ಟ ಕಣ್ಣುಗಳ
ಮುರಿದ ಗೋಣಿನ ಬಸಿವ ತೊರಳೆಯ
ಹರಿವ ರಕುತದ ತಳಿತ ಖಂಡದ
ಬಿರಿದ ಬಸುರಿನ ರೌರವದ ರಣಭೂಮಿ ರಂಜಿಸಿತು ೧೧

ಗರುಡನುಬ್ಬಟೆಗಹಿ ನಿಕರ ಜ
ಜ್ಝರಿತವಾದವೊಲಿವನ ಕಡು ನಿ
ಬ್ಬರದ ಧಾಳಿಗೆ ಧೈರ‍್ಯಗೆಟ್ಟುದು ಕೂಡೆ ಕುರುಸೇನೆ
ಹೊರಳಿಯೊಡೆದರು ಭಟರು ಸಿಡಿದರು
ಜರುಗಿದರು ಜವಗುಂದಿದರು ಮಡ
ಮುರಿದು ಬಿರುದರು ತಣಿದುದೈ ಪರಿಭವದ ಸೂರೆಯಲಿ ೧೨

ಧಾತುಗೆಟ್ಟುದು ದೊದ್ದೆಯೆಂದೇ
ಭೂತಳಾಧಿಪ ಬಗೆಯದಿರು ತೆಗೆ
ಮಾತು ಹುಸಿ ಮರಳಿದರು ನಿನ್ನಯ ಪಟ್ಟದಾನೆಗಳು
ಭೀತಿಗೊಂಡನು ದ್ರೋಣ ಸೋಲಕೆ
ಕೇತುವಾದನು ಶಲ್ಯನಪಜಯ
ಮಾತೃಕಾಕ್ಷರನಾದನಶ್ವತ್ಥಾಮನಿಂದಿನಲಿ ೧೩

ಇವನ ಧಾಳಿಯನಿವನ ಧೈರ‍್ಯವ
ನಿವನ ಹೂಣಿಗತನವನಿವನಾ
ಹವದ ಹೊರಿಗೆಯನಿವನ ಭಾರಿಯ ವೆಗ್ಗಳೆಯತನವ
ದಿವಿಜರಾನಲು ನೂಕದಿದು ನ
ಮ್ಮವರ ಪಾಡೇನೈ ಪಲಾಯನ
ತವನಿಧಿಯಲೇ ನಿಮ್ಮ ಬಲ ಧೃತರಾಷ್ಟ್ರ ಕೇಳೆಂದ ೧೪

ಹಾಯಿಕಲಿ ಟೆಕ್ಕೆಯವ ಭಟ್ಟರ
ಬಾಯ ಹೊಯ್ ಗಡಬಡೆಯ ಹೊತ್ತ
ಲ್ಲಾಯುಧವನೀಡಾಡು ಕೊಯ್ ಕೊಯ್ ಜೋಡು ಹೊಲಿಗೆಗಳ
ರಾಯ ಕೊಂದರೆ ಕೊಲಲಿ ಸುಕೃತವು
ಬೀಯವಾಗಲಿ ನಾವು ರಕ್ಕಸ
ನಾಯ ಕಯ್ಯಲಿ ಸಾಯೆವೆನುತೊಡೆಮುರಿದರತಿರಥರು ೧೫

ಇಳಿದ ಕುದುರೆಗೆ ಬಿಸುಟ ರಥಸಂ
ಕುಳಕೆ ಹಾಯ್ಕಿದ ಟೆಕ್ಕೆಯಕೆ ಕೈ
ಬಳಿಚಿದಾಯುಧತತಿಗೆ ನೂಕಿದ ಜೋಡು ಸೀಸಕಕೆ
ಕಳಚಿದಾಭರಣಾತಪತ್ರಾ
ವಳಿಗೆ ಕಾಣೆನು ಕಡೆಯನೀ ಪರಿ
ಕೊಲೆಗೆ ಭಂಗಕೆ ನಿನ್ನ ಬಿರುದರು ಬಂದುದಿಲ್ಲೆಂದ ೧೬

ಸಿಡಿವ ತಲೆಗಳ ಬಳಿವಿಡಿದು ಧಾ
ರಿಡುವ ರಕುತದಲೆರಡು ಬಲದಲಿ
ಹಿಡಿದ ದೀವಿಗೆ ನಂದಿದವು ಕುಂದಿದುದು ಚತುರಂಗ
ಮಡಮುರಿಯಮಯವಾಯ್ತು ಸುಭಟರ
ನಿಡು ಮುಸುಕು ಮೋಹಿಸಿತು ಮುರುಹಿನ
ಕಡುಹುಕಾರರು ಕೇಣಿಗೊಂಡರು ಬಹಳ ದುಷ್ಕೃತವ ೧೭

ದ್ರೋಣನೆಂಬರೆ ಮುನ್ನವೇ ನಿ
ರ‍್ಯಾಣದೀಕ್ಷಿತನಾದನಾತನ
ಕಾಣೆವೈ ಗುರುಸುತನದೃಶ್ಯಾಂಜನವೆ ಸಿದ್ಧಿಸಿತು
ಹೂಣಿಗರು ಮತ್ತಾರು ಶಲ್ಯ
ಕ್ಷೋಣಿಪತಿ ಕೃತವರ್ಮ ಕೃಪನತಿ
ಜಾಣರೋಟದ ವಿದ್ಯೆಗೆನುತಿರ್ದುದು ಭಟಸ್ತೋಮ ೧೮

ಏನ ಹೇಳುವೆನಮಮ ಬಹಳಾಂ
ಭೋನಿಧಿಯ ವಿಷದುರಿಯ ಧಾಳಿಗೆ
ದಾನವಾಮರರಿಂದುಮೌಳಿಯ ಮರೆಯ ಹೊಗುವಂತೆ
ದಾನವಾಚಳ ಮಥಿತ ಸೇನಾಂ
ಭೋನಿಧಿಯ ಪರಿಭವದ ವಿಷದುರಿ
ಗಾ ನರೇಂದ್ರ ನಿಕಾಯ ಹೊಕ್ಕುದು ರವಿಸುತನ ಮರೆಯ ೧೯

ಶರಣು ಹೊಕ್ಕುದು ಬಂದು ಮಕುಟದ
ಗರುವರವನೀಪಾಲಕರು ಮೋ
ಹರಕೆ ತೋರ್ಪಟ್ಟವರು ಭಾರಿಯ ಬಿರುದಿನತಿಬಳರು
ದುರುಳ ದೈತ್ಯನ ಬಾಧೆ ಘನ ಪರಿ
ಹರಿಸಲರಿಯೆವು ಕರ್ಣ ನೀನೇ
ಮರಳಿ ಸೇನೆಯ ರಕ್ಷಿಸೆಂದುದು ನಿಖಿಳ ಪರಿವಾರ ೨೦

ತಳಿತ ಮಂಸುಕಿನ ಬೆರಳ ಮೂಗಿನ
ನೆಲನ ನೋಟದ ಮೆಯ್ಯ ತೂಕದ
ಝಳದ ಸುಯ್ಲಿನ ಮುಖದ ಮೋನದ ನಸಿದ ನೆನಹುಗಳ
ಕಳಿದ ಕಡುಹಿನ ಬೀತ ಬಿರುದಿನ
ಬಲಿದ ಭಂಗದ ನೃಪತಿಗಳನ
ಗ್ಗಳೆಯ ರವಿಸುತ ಕಂಡು ಹೊಗಳಿದನಾ ಘಟೋತ್ಕಚನ ೨೧

ಶಿವಶಿವಾ ಕೌರವನ ಸುಭಟರು
ದಿವಿಜರಿಗೆ ವೆಗ್ಗಳರು ನಿನಗಿಂ
ದಿವರು ಸೋತರು ಪೂತು ದಾನವ ನೀ ಕೃತಾರ್ಥನಲ
ಇವನ ಪಾಡಿನ ಸುಭಟರೇ ನ
ಮ್ಮವರು ಗೆಲವೇನಿವನದೇ ಮಾ
ಧವನ ಸೂತ್ರದಯಂತ್ರವಿದು ಲಯಕಾಲ ನಮಗೆಂದ ೨೨

ಸಾಕು ದೈತ್ಯನ ಕೆಡಹು ಸೇನೆಯ
ಸಾಕು ಸುಭಟರು ಬಾಯಬಿಡುತಿದೆ
ನೂಕು ನೂಕಮರಾರಿಯನು ತಡೆ ತಡವುಮಾಡದಿರು
ಆಕೆವಾಳರು ವಿಗಡ ವೀರಾ
ನೀಕವಿದೆ ತಲ್ಲಣದ ತಗಹಿನ
ಲೇಕೆ ಕಾಲಕ್ಷೇಪವೇದನು ಕೌರವರಾಯ ೨೩

ದುಗುಡವೋ ಮೇಣ್ ವಿಕ್ರಮಾಗ್ನಿಯ
ತಗಹುಗಳ ತನಿಹೊಗೆಯೊ ರಾಯರ
ಮೊಗವ ನೋಡೈ ಕೀರ್ತಿಕೌಮುದಿ ಕಳಿದ ಕತ್ತಲೆಯೊ
ಬಿಗಿದ ಭೀತಿಯ ಸೂರೆಗಳೊ ಮೋ
ರೆಗಳೊ ಸವಿವಾತುಗಳ ಸೋನೆಯ
ಸೊಗಸುಕಾರರು ನಿಂದ ನಿಲವನು ಕರ್ಣ ನೋಡೆಂದ ೨೪

ವಿಗಡತನವನು ವಹಿಲದಲಿ ಕೈ
ಮುಗುಚಿ ಕಳೆದರು ಹೂಸಿಕದ ಹೂ
ಣಿಗತನವ ಸೊನ್ನಾರವಿದ್ಯೆಯ ಸಾಹಸೋನ್ನತಿಯ
ಸೊಗಸ ಹುಟ್ಟಿಸಿ ಸುಲಿವ ರಸವಾ
ದಿಗಳನಿವರ ವಿಡಾಯಿಗಳ ನಂ
ಬುಗೆಯ ಕೇವಣ ಪಾಡುಕಾರರ ಕರ್ಣ ನೋಡೆಂದ ೨೫

ನಡೆವುತೆಡಹಿದ ಪಟ್ಟದಾನೆಯ
ಮಿಡಿಯ ಹೊಯ್ವರೆ ಜೀಯ ರಣವವ
ಗಡವು ನಮಗಿದು ರಾತ್ರಿ ದೈತ್ಯರಿಗಿದುವೆ ನಡುಹಗಲು
ಮೃಡನನೊಂದವಸರಕೆ ಬಗೆಯದ
ಕಡುಹುಕಾರರು ನಿನ್ನವರು ಕೆಡೆ
ನುಡಿದು ನೋಯಿಸಲೇತಕೆಂದನು ಕರ್ಣನರಸಂಗೆ ೨೬

ತಾಗಿ ವಜ್ರವ ಮುಕ್ಕುಗಳೆವಡೆ
ಸಾಗರವ ಹೊಗಲೇಕೆ ಗಿರಿಗಳು
ಹೋಗಲಿನ್ನಾ ಮಾತು ಮೀರಿದ ದೈತ್ಯನುಪಟಳವ
ಈಗ ಮಾಣಿಸು ನಮ್ಮ ಸುಭಟರು
ಯೋಗಿಗಳವೊಲು ದಂಡಹೀನರು
ಬೇಗ ಮಾಡಿನ್ನಮರವೈರಿಯ ತರಿದು ಬಿಸುಡೆಂದ ೨೭

ಕಳೆದ ಮಿಾಸಲ ಶಕ್ತಿ ಪಾರ್ಥನ
ತಲೆಗೆ ಬೈಚಿಟ್ಟಿಹುದನೀಗಳು
ಸೆಳೆದೆನಾದರೆ ಮುಂದೆ ಫಲುಗುಣನೆನ್ನ ಲೆಕ್ಕಿಸನು
ಉಳಿದ ಬಾಣಂಗಳಲಿ ದೈತ್ಯನ
ಗೆಲುವುದರಿದಿದಕಾವ ಹದನೋ
ತಿಳಿಯಲರಿಯೆನು ಜೀಯಯೆಂದನು ಕುರುಪತಿಗೆ ಕರ್ಣ ೨೮

ಈಗಳೀ ದಾನವನ ಬಲೆಯಲಿ
ತಾಗಿ ಸಿಲುಕಿತು ನಮ್ಮ ಮೋಹರ
ಮೇಲೆ ಫಲುಗುಣನಾರ ಕೊಲುವನು ಮರಣ ನಮಗಾಗೆ
ನೀಗಿ ಕಳೆ ಕೊಲೆಗಡಿಗನನು ಜಯ
ವಾಗಲೀಗಳೆ ಮುಂದೆ ನರನು
ದ್ಯೋಗಕಾರ್ಯವೆವು ಚಿಕಿತ್ಸೆಯನೆಂದನಾ ಭೂಪ ೨೯

ಆದಡಮರವಿರೋಧಿಯಸುವನು
ಸೇದುವೆನು ಸರಿಸದಲಿ ನಿಂದರೆ
ನಾದುವೆನು ನಿಟ್ಟೊಡಲ ರಕುತದಲಖಿಳ ದಿಗುತಟವ
ಕಾದುವೆನು ನಮ್ಮವರು ಕಳಚಿದ
ಕೈದುವನು ಕೈವಶಮಾಡಿ ವಿ
ನೋದವನು ನೀವ್ ನೋಡಿ ಎಂದನು ಕರ್ಣನರಸಂಗೆ ೩೦

ಇತ್ತಲೈ ದನುಜೇಂದ್ರ ಕದನವ
ದಿತ್ತಲಿತ್ತಲು ಗಮನ ಸುಭಟರ
ಕತ್ತಲೆಯೊಳೋಡಿಸಿದ ಕಡುಹನು ತೋರು ನಮ್ಮೊಡನೆ
ಮೃತ್ಯು ನಿನಗಾನೆನ್ನೊಡನೆ ತಲೆ
ಯೊತ್ತಿನೋಡೆಂದೆನುತ ಬೊಬ್ಬಿರಿ
ವುತ್ತ ದೈತ್ಯನ ತರುಬಿದನು ಬಲವೆಲ್ಲ ಬೆರಗಾಗೆ ೩೧

ಎಲವೊ ನೆರೆ ಗಂಡಹೆ ಕಣಾ ನೀ
ಮಲೆತು ನಿಂದುದು ಸಾಲದೇ ಸುರ
ರೊಳಗೆ ಸಿತಗರ ಸೀಳುವೆನು ಮಾನವರ ಪಾಡೇನು
ಕಲಿತನಕೆ ಮೆಚ್ಚಿದೆನು ಸತ್ತರೆ
ಮೊಳೆಯದಿಹುದೇ ಕೀರ್ತಿ ರಿಪುಬಲ
ದೊಳಗೆ ದಿಟ್ಟನು ಕರ್ಣ ನೀನೆನುತಸುರ ಮಾರಾಂತ ೩೨

ತಾನೆ ತನ್ನನೆ ಹೊಗಳಿಕೊಂಬರೆ
ಮಾನನಿಧಿಯಾದವರು ಸಾಕೀ
ದಾನವರ ಗರುವಾಯಿ ಭಾರಿಯ ಭಂಡವಿದ್ಯೆಗಳು
ಏನು ಹೊಸತೆಂತೆಂತು ಶರಸಂ
ಧಾನವುಳಿದಗ್ಗಳಿಕೆಗಳ ಮಾ
ತೇನು ಬಲ್ಲರೆ ಬಿಲ್ಲ ಹಿಡಿ ಹಿಡಿ ಕಾಣಲಹುದೆಂದ ೩೩

ಫಡ ದೊಠಾರಿಸಿ ನುಡಿದ ಜಿಹ್ವೆಯ
ಹೆಡತಲೆಯಲುಗಿವೆನು ಕಣಾ ಕೇಳ್
ತೊಡಕಿ ತನ್ನಲಿ ಬದುಕುವವರಾರಿಂದ್ರ ಯಮರೊಳಗೆ
ಕಡುಹುಕಾರರ ಗರ್ವವಿಷಗಾ
ರುಡವನೆನ್ನಲಿ ನೋಡು ನೋಡೆನು
ತೊಡನೊಡನೆ ಶರವಳೆಯ ಕರೆದನು ಪವನಸುತಸೂನು ೩೪

ದಾನವರು ದಕ್ಕಡರು ಧೈರ್ಯೋ
ದ್ದಾನಶೀಲರು ಛಾಯವನು ಗಿರಿ
ಯಾನಬಾರದು ಮುಷ್ಟಿಬಲವೆಗ್ಗಳರು ಸತ್ವದಲಿ
ಈ ನಿರಂತರ ಬಾಣ ರಚನಾ
ನೂನ ಧನುರಭ್ಯಾಸದನುವನ
ದೇನ ಹೇಳುವೆ ಲೇಸೆನುತ ಕಲಿಕರ್ಣ ತೆಗೆದೆಚ್ಚ ೩೫

ಹಾರಿದವು ಗರಿಸಹಿತ ದೇಹವ
ಡೋರುಗಳೆದಂಬುಗಳು ನೆತ್ತರ
ಜೋರು ಮಸಗಿತು ಕೂಡೆ ಜಾಜಿನ ಗಿರಿಯ ರೌಕುಳದ
ಏರ ಬಾಯ್ಗಳ ತಳಿತಖಂಡದ
ಸೂರೆಗೊಂಡವು ಹಿಂದಣಂಬುಗ
ಳಾರೆನಭಿವರ್ಣಿಸಲು ಕರ್ಣ ಘಟೋತ್ಕಚಾಹವವ , ೩೬

ತಾರಕನ ಕೈಟಭನ ಮಹಿಷನ
ವೀರ ಜಂಭನ ಕಾಲನೇಮಿಯ
ತಾರಕಾಕ್ಷನ ಕುಂಭಕರ್ಣನ ಮುರ ಗುಹಾಸುರನ
ಆರುಭಟೆ ರಣದುಬ್ಬಟೆಯ ಜ
ಜ್ಝಾರತನವಿವನೊಬ್ಬನಲಿ ಕೈ
ವಾರವೇ ನೆರೆ ಕಾಣಲಾಯ್ತೆಂದುದು ಸುರಸ್ತೋಮ ೩೭

ನಿಲುವಡಸುರನ ಮುಂದೆ ಕರ್ಣನೆ
ನಿಲಲು ಬೇಹುದು ಕರ್ಣನುರುಬೆಗೆ
ನಿಲುವಡೀಯಮರಾರಿಗೊಪ್ಪುವುದೈ ಮಹಾದೇವ
ಉಳಿದ ಭೂರಿಯ ಬಣಗುಗಳು ವೆ
ಗ್ಗಳೆಯವೆಸರಿಗೆ ನೋಂತರೇ ಕುರು
ಬಲದೊಳರಿಬಲದೊಳಗೆ ಸರಿಯಿನ್ನಿವರಿಗಿಲ್ಲೆಂದ ೩೮

ಎರಡು ಬಲವಿವರಿಬ್ಬರಾಹವ
ದರವಣೆಯನೇ ನೋಡುತಿರ್ದುದು
ಸರಿಮಿಗಿಲ ಕಾದಿದರು ಶಿವ ಶಿವ ಭಾರಿಯಂಕದಲಿ
ಸರಳು ತೀರಲು ತೀರದಸುರನ
ಕೆರಳಿದುರಿ ಕುಡಿಯಿಟ್ಟುದಿವನ
ಬ್ಬರಣೆ ಕೆಡೆಬೀಳೆನುತ ಶೂಲದಲಿಟ್ಟನಿನಸುತನ ೩೯

ಹೊಗರುಗಿಡಿಗಳ ಬಾಯಿಧಾರೆಯ
ಲೊಗೆವ ಹೊಗೆಗಳ ಹೊದರಿನುರಿ ಜಾ
ಳಿಗೆಯ ಭೋಂಕಾರದ ಭಯಂಕರ ಶೂಲವೈತರಲು
ನಗುತ ಮೂರಂಬಿನಲಿ ಕೈದುವ
ತೆಗೆಸಿದನು ನೆರೆ ಹತ್ತು ಶರವನು
ಹಗೆಯ ಹೇರುರದೊಳಗೆ ಹೂಳಿದು ಕರ್ಣ ಬೊಬ್ಬಿರಿದ ೪೦

ದರಿಗಳೊಳು ದರ್ವೀಕರಾವಳಿ
ಯುರವಣಿಸಿದರೆ ಬಲ್ಲುದೇ ಕುಲ
ಗಿರಿ ಮಹಾದೇವಾವ ಸತ್ವವೊ ದಾನವೇಶ್ವರಗೆ
ಅರಿಯ ಶರಹತಿಗೊಡಲು ನೆರೆ ಜ
ರ್ಜ್ಜರಿತವಾಗಲು ನೊಂದುದಿಲ್ಲ
ಬ್ಬರಿಸಿ ಪರಿಘದಲಿಟ್ಟನಂಬುಜಬಂಧುನಂದನನ ೪೧

ತಿರುಗುತ್ತೈತಹ ಪರಿಘ ಕಾಂತರೆ
ಗಿರಿಗಳಡಿ ಮೇಲಹವು ನಾವಿ
ನ್ನರಸ ಹೇಳುವುದೇನು ಕರ್ಣನ ಬಾಹುವಿಕ್ರಮವ
ಪರಿಘವದು ಪರಮಾಣುಮಯವಾ
ಯ್ತೆರಡುಶರದಲಿ ಸಾರಥಿಯನಿ
ಟ್ಟೊರಸಿದನು ಹದಿನೈದು ಶರದಲಿ ರಥದ ಕುದುರೆಗಳ ೪೨

ಸಮರಸಾಧನ ಸವೆಯೆ ಕೋಪದ
ತಿಮಿರ ಗರಿಗಟ್ಟಿತು ಮಹಾವಿ
ಕ್ರಮನ ಚಳಕವನೇನ ಹೇಳುವೆ ರಥದ ಬಳಸಿನಲಿ
ಸಮತಳಿಸಿ ಕೈದುಗಳ ಮಳೆಯನು
ದ್ಯುಮಣಿತನಯನ ಮೇಲೆ ಕರೆದನು
ನಿಮಿಷಕದ ಪರಿಹರಿಸಿ ದೈತ್ಯನನೆಚ್ಚನಾ ಕರ್ಣ ೪೩

ತೂರಿದರೆ ತನಿಹೊಟ್ಟು ಗಾಳಿಗೆ
ಹಾರುವುದು ಕುಲಗಿರಿಯ ಬೈಸಿಕೆ
ಜಾರುವುದೆ ಮಝು ಪೂತು ನಮ್ಮಾಯುಭಯ ಕಟಕದಲಿ
ತೋರಲಿಲ್ಲೆಣೆ ಜಗದೊಳೋಲೆಯ
ಕಾರ ನೀನಹೆಯೆನುತ ಸುರರಿರಿ
ಗಾರ ಕವಿದನು ಕರ್ಣನಳವಿಗೆ ಜಡಿವಡಾಯುಧದಿ ೪೪

ಘಡ ದೊಠಾರಿಸಿ ನಿಂದರೆರಡೇ
ಕಡಿಯ ಮಾಡುವೆನೆಲವೊ ನಿನ್ನಯ
ಗಡಣಿಗರ ಕರೆ ಕಾಯ್ದುಕೊಳ್ಳಲಿ ಸುಯೋಧನಾದಿಗಳು
ಮಡಮುರಿಯದಿದಿರಾಗು ರಕುತವ
ಕುಡಿಸುವೆನು ಕೂರಸಿಗೆನುತ ಕೊಲೆ
ಗಡಿಗನೌಕಿದಡಿದಿರ ಬಿಟ್ಟನು ಕರ್ಣ ಕೆಲ ಸಿಡಿದ ೪೫

ಅಹಹ ಶಿವಶಿವ ದೈತ್ಯರಾಹು
ಗ್ರಹಣವಾಯಿತು ಕರ್ಣಸೂರ್ಯನ
ಮಹಿಮೆ ಮಸುಳಿತಕಟಕಟಾಯೆನುತಖಿಳಬಲ ಬೆದರೆ
ಅಹಿತನಿಟ್ಟಳಕಳುಕಿ ಕೆಲದಲಿ
ಮಿಹಿರನಂದನನೆಚ್ಚಡಂಬಿನ
ಲಹರಿ ಮಸಗಿತು ಖಳನ ಖಡುಗವ ಕಾಣೆನಾಕ್ಷಣಕೆ ೪೬

ಚಾರಿವರಿದನು ದನುಜ ಮಡ್ಡು ಕ
ಠಾರಿಯಲಿ ಕರ್ಣಾಸ್ತ್ರಧಾರಾ
ಸಾರದಲಿ ಮೈನನೆದು ಹೊನಲಿಡುವರುಣವಾರಿಯಲಿ
ಆರಿವನು ಹೈಡಿಂಬನೀಚೆಯ
ಲಾರು ಭೀಮಜನಿತ್ತಲಾರು ಬ
ಕಾರಿನಂದನನೆನಲು ಬಲವಿರುಳಸುರಮಯವಾಯ್ತು ೪೭

ಅಣೆದನಶ್ವತ್ಥಾಮನನು ತ
ಕ್ಷಣದೊಳರಸನ ತಾಗಿ ದ್ರೋಣನ
ಕೆಣಕಿ ದುಶ್ಶಾಸನನ ಮಸೆಗಾಣಿಸಿ ಕೃಪಾದಿಗಳ
ರಣದೊಳೋಡಿಸಿ ಮುರಿದು ಕರ್ಣನ
ಸೆಣಸಿ ನಿಂದನು ಮತ್ತೆ ಸಮರಾಂ
ಗಣದ ಚೌಪಟಮಲ್ಲನಿತ್ತನು ಪಡೆಗೆ ತಲ್ಲಣವ ೪೮

ಬರಿಯ ಕಕ್ಕುಲಿತೆಯಲಿ ಕರ್ಣನ
ಮರೆಯ ಹೊಕ್ಕೆವು ಕರ್ಣನೀತನ
ತರುಬಿದನಲಾ ಶಕ್ತಿಯಾವೆಡೆಯೆಂದು ಕೆಲಕೆಲರು
ಕರುಬುತನವೇಕಕಟ ಪುಣ್ಯದ
ಕೊರತೆ ನಮ್ಮದು ಕರ್ಣನೇಗುವ
ನಿರಿತಕಂಜಿದ ನಾವೆ ಬಾಹಿರರೆಂದರುಳಿದವರು ೪೯

ಕಾರಿಸುವೆನಿವನಸುವನಿವ ಮೈ
ದೋರಿ ನಿಂದರೆ ನಿಮಿಷದಲಿ ಬಾ
ಯಾರದಿರಿ ಕಳ್ಳೇರುಕಾರನ ಕರುಳ ಹರಹುವೆನು
ಜಾರದಿರಿಯೆನುತಭಯಹಸ್ತವ
ತೋರಿ ತುಡುಕಿದನುಗ್ರಧಾರೆಯ
ತೂರುಗಿಡಿಗಳ ತುರುಗಿದುರಿಯ ಮಹಾಸ್ತ್ರವನು ಕರ್ಣ ೫೦

ತಳಿತ ಕಿಡಿಗಳ ಕೈದುವಿನ ಮೈ
ಝಳದ ಝಾಡಿಯೊಳುಭಯ ಬಲದ
ಗ್ಗಳದ ಹರುಷ ವಿಷಾದ ವಾರಿಧಿ ಕಾಲುಹೊಳೆಯಾಯ್ತು
ಬಿಳಿಯ ಚೌರಿಗಳೆಸೆಯೆ ಘಂಟಾ
ವಳಿಗಳಣಸಿನ ಹೊಗರನುಗುಳುವ
ಹೊಳೆವ ಧಾರೆಯ ಭಾರಿಶಕ್ತಿಯ ತೂಗಿದನು ಕರ್ಣ ೫೧

ಕಾಯಲಾಪರೆ ದನುಜ ಕರೆ ಕಮ
ಲಾಯತಾಕ್ಷನನಿಂದು ಬದುಕುವು
ಪಾಯವುಳ್ಳಡೆ ಬೇಗ ಬೆಸಗೊಳು ಭೀಮ ಫಲುಗುಣರ
ಆಯುಧಕೆ ತೆರವಿಟ್ಟೆನೈ ನಿ
ನ್ನಾಯುಷವ ಹಿಂದಿಕ್ಕಿ ಕೊಂಬನ
ತಾಯೆನುತ ಬೊಬ್ಬಿರಿದು ಶಕ್ತಿಯಲಿಟ್ಟನಾ ಕರ್ಣ ೫೨

ಆರಿದನು ಪರಿಹರಿಸುವರು ಜಂ
ಭಾರಿ ಕೊಟ್ಟನು ಕಮಲಭವ ಕಾ
ಮಾರಿಗುಬ್ಬಸದ ಕೈದುವಜೇಯವೆಂದಿದನು
ಧಾರೆಯಲಿ ದಳ್ಳಿಸುವ ಕಿಡಿಗಳ
ಭಾರಿಯಾಯುಧವಸುರನುರವನು
ಡೋರುಗಳೆದುದು ಹಾಯ್ದುಹೋದುದು ವಾಸವನ ಹೊರೆಗೆ ೫೩

ಆರಿ ಬೊಬ್ಬಿರಿವುತ್ತ ಕಂಡುದು
ಪಾರುಖಾಣೆಯನಸುರನಸು ಬಲು
ಭಾರಿಯೊಡಲೊರ್ಗುಡಿಸಿ ಕೆಡೆದುದು ಬಿರಿದ ಗಿರಿಯಂತೆ
ತೇರು ತುರಗ ಪದಾತಿ ಕರಿಘಟೆ
ವೈರಿಬಲದಲಿ ನಮ್ಮ ಬಲದಲಿ
ತೀರಿತೊಂದಕ್ಷೋಣಿ ಸುರರಿಪು ಬಿದ್ದ ಭಾರದಲಿ ೫೪

ಕುರುಬಲದ ಕಳಕಳದ ಹವಣ
ಲ್ಲರಿಬಲದ ಸಂತೋಷವಿದು ಮುರ
ಹರನ ಮಂತ್ರವು ಜೀಯ ಹರಿ ಸೂಳೈಸಿದನು ಭುಜವ
ಗರಳವಿಲ್ಲದ ಕುಪಿತಫಣಿ ಹಲು
ಮೊರೆದು ಮಾಡುವುದೇನು ಕರ್ಣನ
ನೊರಸಿದೆವು ಹೋಗೆಂದು ಸಂತೈಸಿದನು ಪಾಂಡವರ ೫೫

ಸಾರಿದನು ಶರಮಂಚವನು ಭಾ
ಗೀರಥೀನಂದನನು ಕರ್ಣನು
ಬೇರುಹರಿದಾ ದ್ರುಮದವೊಲು ಗತಶೌರ್ಯನಿನ್ನೇನು
ಭಾರಿಯಾಳ್ಳೈ ದ್ರೋಣನಾತನು
ತೀರಿದನು ಹಾ ಪಾಂಡುಸುತರಿ
ನ್ನಾರ ಮುರಿಯರು ವೀರನಾರಾಯಣನ ಕರುಣದಲಿ ೫೬

ಹದಿನೇಳನೆಯ ಸಂಧಿ

ಸೂ. ಇರುಳು ಸಮರದಲುಭಯರಾಯರ
ಗುರು ವಿರೋಧಿ ಮಹೀಶ ಸೇನಾ
ಶರಧಿಯನು ಕಲಕಿದನು ಗೆಲಿದನು ಮಕುಟವರ್ಧನರ

ಕೇಳು ಧೃತರಾಷ್ಟ್ರಾವನಿಪ ನಿ
ಮ್ಮಾಳನವರಾಳನು ವಿಭಾಡಿಸಿ
ನೀಲಗಿರಿಯೆಡೆವೊಕ್ಕುದೆನೆ ಖಳನೊಡಲು ನಿಡುಗೆಡೆಯೆ
ಕಾಳೆಗದ ಕೈಚಳಕದವನು
ಬ್ಬಾಳುತನವಕ್ಕುಡಿಸೆಯಿಕ್ಕೆಲ
ದಾಳು ತೆಗೆದುದು ಬಿಗಿದ ಕತ್ತಲೆ ಮೊಗೆದುದಂಬರವ ೧

ಇನ್ನು ಬದುಕಿದೆವಮಮ ರಕ್ಕಸ
ಕುನ್ನಿಯುಳಿಗವಡಗಿತೆಂದೇ
ನಿನ್ನವರ ಸುಮ್ಮಾನವುಕ್ಕಿತು ಸುಕ್ಕಿತತಿಭೀತಿ
ಇನ್ನು ಫಡಫಡ ಸೂತತನುಜನ
ಬೆನ್ನಲುಗಿವೆವು ಕರುಳನಾಹವ
ಕೆನ್ನ ಬಿಡುಬಿಡು ಎನುತ ಗರ್ಜಿಸಿ ಹೊಕ್ಕುದರಿಸೇನೆ ೨

ಅಂಗವಣೆ ಮನದಲ್ಲಿ ಪದದಲಿ
ಮುಂಗುಡಿಯ ದುವ್ವಾಳಿ ಕಯ್ಯಲಿ
ಸಿಂಗದಾಯತ ಸವೆಯದೆರಡೊಡ್ಡಿನಲಿ ಸುಭಟರಿಗೆ
ಕಂಗಳನು ಕಾರಿರುಳು ರಕ್ಕಸಿ
ನುಂಗಿದಳು ನಾನೇನನುಸುರುವೆ
ನಂಗವಿಸಿ ಕಡುಗಲಿಗಳಿರಿದಾಡಿದರು ತಮ್ಮೊಳಗೆ ೩

ಒಳಗೊಳಗೆ ಹೊಯಿದಾಡಿ ಹೊರಳುವ
ಬಲುಭಟರನಗಿದೊಗುವ ಬಲುಗ
ತ್ತಲೆಯ ಕೋಳಾಹಳವನುಭಯದ ಚಾತುರಂಗದಲಿ
ಬಲಿದ ತೂಕಡಿಕೆಗಳ ನಸು ಬೆದ
ರೊಲಹುಗಳ ಜವವೆದ್ದ ರ್ಘೊಮ್ಮಿನ
ಬಲೆಗೆ ಸಿಲುಕಿದ ಬಲವನರ್ಜುನದೇವನೀಕ್ಷಿಸಿದ ೪

ಶಿವಶಿವಾ ಬಳಲಿದುದು ಬಲವಗಿ
ದವಗಡಿಸಿದುದು ನಿದ್ದೆ ನೂಕದು
ಬವರವುಬ್ಬಿದ ತಿಮಿರವಳಿಯಲಿ ಸಾಕು ರಣವೆನುತ
ದಿವಿಜಪತಿಸುತನೆದ್ದು ಸೇನಾ
ನಿವಹದಲಿ ಸಾರಿದನು ಲಗ್ಗೆಯ
ರವವ ನಿಲಿಸಿದನಖಿಳ ಘನಗಂಭೀರ ನಾದದಲಿ ೫

ಬಳಲಿದಿರಿ ಹಗಲಿರುಳಕಾಳೆಗ
ದೊಳಗೆ ಕೈಮಾಡಿದಿರಿ ಕಗ್ಗತ್ತಲೆಯ
ಬಲುಗಂಡಿಯಲಿ ಸಿಲುಕಿತು ಕಂಗಳಂಗವಣೆ
ನಳಿನರಿಪುವುದಯಿಸಲಿ ಬೆಳುದಿಂ
ಗಳಲಿ ಕೈದುವ ಕೊಳ್ಳಿ ನಿದ್ರೆಯ
ನಿಳಿಯಬಿಡಬೇಡೆಂದು ಸೇನೆಗೆ ಸಾರಿದನು ಪಾರ್ಥ ೬

ನರನ ಮಾತಿಂ ಮುನ್ನ ನಿದ್ರಾ
ಭರದ ಭಾರಿಯ ಹೊರೆಯ ಭಟರಿ
ತ್ತರದದೊಲೆದರು ಸಡಿಲಿದವು ಕೈದುಗಳು ಕರಗಳಲಿ
ನೆರೆದುಸುರ ವೈಹಾಳಿಗಳ ನಿ
ಬ್ಬರದ ಮೊರಹಿನ ಮುರಿದಗೋಣಿನ
ಕರದ ತಲೆಗಿಂಬುಗಳ ಕಾಲಾಳೊರಗಿತವನಿಯಲಿ ೭

ಒಲೆದ ಒಡಲನು ಮುರಿದು ಬರಿಕೈ
ಗಳನು ದಾಡೆಯೊಳಿಟ್ಟು ಪೂತ್ಕೃತಿ
ಬಲಿದ ನಾಸಾಪುಟದ ಜೋಲಿದ ಕರ್ಣಪಲ್ಲವದ
ತಳಿತ ನಿದ್ರಾರಸವನರೆ ಮು
ಕ್ಕುಳಿಸಿದಕ್ಷಿಯೊಳೆರಡು ಗಲ್ಲದ
ಲುಲಿವ ತುಂಬಿಯ ರವದ ದಂತಿಗಳೆಸೆದವೊಗ್ಗಿನಲಿ ೮

ಬಾಯ ಲೋಳೆಗಳಿಳಿಯೆ ಮೈ ಹಳು
ವಾಯಿ ಮಿಗೆ ತುದಿ ಖುರವನೂರಿ ನ
ವಾಯಿ ಮಿಗಲರೆನೋಟದಾಲಿಯ ಮಿಡುಕದವಿಲಣದ
ಲಾಯದಲಿ ಲಂಬಿಸಿದವೊಲು ವಾ
ನಾಯುಜದ ಸಾಲೆಸೆದುದೊರಗಿದ
ರಾಯ ರಾವ್ತರ ಮಣಿಮಕುಟ ಮರಗೋಡನೋಲೈಸೆ ೯

ಒಲಿದ ಕಾಂತೆಯು ಕೂಡೆ ಮನುಮಥ
ಕಲಹದಲಿ ಬೆಂಡಾದ ಕಾಂತನು
ಕಳಶಕುಚ ಮಧ್ಯದಲಿ ಮಲಗುವವೋಲು ರಜನಿಯಲಿ
ಒಲಿದ ಸಮರಶ್ರಮದಲತಿವೆ
ಗ್ಗಳ ಗಜಾರೋಹಕರು ಕುಂಭ
ಸ್ಥಳದ ಮೇಲೊರಗಿದರು ನಿದ್ರಾ ಮುದ್ರಿತೇಕ್ಷಣರು ೧೦

ಕಲಹವನು ಕನಸಿನಲಿ ಕಂಡ
ವ್ವಳಿಸಿ ಹಳುಹಳು ಪೂತು ಸಾರಥಿ
ಭಲರೆ ಸಾರಥಿ ಜಾಗುರೆನುತಿರ್ದುದು ಮಹಾರಥರು
ತೊಲಗದಿರಿ ತಿನ್ನಡಗನಹಿತನ
ತಿಳಿರಕುತವನು ಸುರಿಯೆನುತ ಕಳ
ವಳಿಸುತಿರ್ದರು ವೀರರೆಡೊಡ್ಡಿನಲಿ ರಭಸದಲಿ ೧೧

ಎಲೆ ಮಿಡುಕದೆರಡೊಡ್ಡು ಲೆಪ್ಪದ
ಬಲದ ವೊಲು ನಿದ್ರಾ ಸಮುದ್ರವ
ಮುಳುಗಿ ಝೊಮ್ಮಿನ ಝಾಡಿಯಲಿ ಝೊಂಪಿಸಿದುದರೆಜಾವ
ತಳಿತ ಮರವೆಯ ಪಾಳೆಯದ ಕ
ಗ್ಗೊಲೆಗೆ ಕವಿವ ಗುರೂಪದೇಶಾ
ವಳಿಯವೊಲು ಮೈದೋರಿದವು ಹಿಮರುಚಿಯ ರಶ್ಮಿಗಳು ೧೨

ತಣಿದುದಂತಃಕರಣ ನಿದ್ರಾ
ಗಣಿಕೆಯರ ರತಿಯಲ್ಲಿ ರಿಂಗಣ
ಗುಣಿವ ಮನ ಹದುಳಿಸಿತು ತಿಳಿದುದು ಝೊಮ್ಮಿನುಮ್ಮೋಹ
ರಣವನೀಗಳೆ ಕಾಣಬಹುದೆಂ
ಬಣಕಿಗರನೆಬ್ಬಿಸುವವೊಲು ಸುಳಿ
ದಣಿದು ಹೊದರೆದ್ದುದು ಸುಧಾದೀಧಿತಿಯ ಕರನಿಕರ ೧೩

ಬಾಡಿದವು ತಾವರೆಗಳುರೆ ಝಳ
ವೋಡಿದವು ನೈದಿಲುಗಳಂಬುಧಿ
ಝಾಡಿ ಮಾಡಲು ಬೆರಸಿದವು ಝಷ ಮಕರ ಕರ್ಕಟಕ
ತೋಡಿದವು ಮುಖದಲ್ಲಿ ತುಂಡದ
ಲೀಡಿರಿದು ಕುಡಿಕುಡಿದು ಬೊಬ್ಬಿ
ಟ್ಟಾಡುತಿರ್ದವು ಸಾಂದ್ರಚಂದ್ರಿಕೆಯಲಿ ಚಕೋರಿಗಳು ೧೪

ನಳಿನದಳದೊಳಗಡಗಿದವು ನೈ
ದಿಲುಗಳಲಿ ತನಿವೊರೆವ ತುಂಬಿಯ
ಕಳರವಕೆ ಬೆಚ್ಚಿದವು ಹೊಕ್ಕವು ಬಗಿದು ತಿಳಿಗೊಳನ
ಝಳಕೆ ಸೈರಿಸದೆಳಲತೆಯ ನೆಳ
ಲೊಳಗೆ ನಿಂದವು ಬೇಗೆ ಬಲುಹಿಂ
ದಳುಕಿ ಮಮ್ಮಲುಮರುಗುತಿರ್ದವು ಜಕ್ಕವಕ್ಕಿಗಳು ೧೫

ವಿನುತ ಸುಕವಿಯ ಸೂಕ್ತಿ ತಾಗಿದ
ಮುನಿಗಳಂತಃಕರಣದಂತಿರೆ
ಹೊನಲುವರಿದವು ಚಂದ್ರಕಾಂತದ ಸಾಲಶಿಲೆ ಕರಗಿ
ಮನದ ಕತ್ತಲೆ ಗುರುವರನ ವಾ
ಕ್ಕಿನಲಿ ತೊಲಗುವವೋಲು ತುಂಬಿಯ
ತನತನಗೆ ನೂಕಿದವು ವಿಕಸಿತ ಕೈರವಾದಿಗಳು ೧೬

ವಿರಹಿಜನದೆದೆಗಿಚ್ಚು ಮನುಮಥ
ನರಸುತನದಭಿಷೇಕಘಟ ತಾ
ವರೆಯ ಕಗ್ಗೊಲೆಕಾರನುತ್ಪಳವನ ವಿದೂಷಕನು
ಹರನ ಹಗೆಯಡ್ಡಣ ವಿಳಾಸಿನಿ
ಯರ ಮನೋರಥಫಲವೆನಲು ಮಿಗೆ
ಮೆರೆದನುದಯಾಚಲದ ಚಾವಡಿಯಲಿ ಸುಧಾಸೂತಿ ೧೭

ತಳಿತ ತಂಪಿನ ತಂಗದಿರ ತೊರೆ
ಯೊಳಗೆ ತೇಕಾಡಿದುದು ಬಲವ
ಗ್ಗಳದ ಬಳಲಿಕೆ ಬೀಳುಕೊಂಡುದು ಬಲಿದುದಂಗವಣೆ
ಒಲೆದು ಬರಿಕೈತೂಗಿ ಕಿವಿಗಳ
ನಲುಗಿದವು ಕರಿನಿಕರವವಿಲಣ
ಘಲಿಲೆನಲು ಕೊಡಹಿದವು ವಳಯವನಖಿಳ ಹಯನಿಕರ ೧೮

ತುರುಬ ಬಲಿದೊಳಗೌಕಿ ವೊನೆ ಮುಂ
ಜೆರಗನಳವಡೆ ಸೆಕ್ಕಿ ಸುತ್ತಿನೊ
ಳಿರುಕಿ ಬಿಗಿದ ಕಠಾರಿ ದಾರದ ಗೊಂಡೆಯವ ಕೆದರಿ
ಒರಗಿದೆಡಬಲದವರನೆಬ್ಬಿಸಿ
ಜರೆದು ವೀಳೆಯಗೊಂಡು ಕೈದುವ
ತಿರುಹುತಾಯತವಾಯ್ತು ಪಡೆಯೆರಡರಲಿ ಪಾಯದಳ ೧೯

ಬಿಗುಹನೇರಿಸಿ ಮತ್ತೆ ತುರಗಾ
ಳಿಗಳ ಬಿಗಿದರು ರಾವುತರು ಹೊರ
ಜಿಗಳ ಜೋಡಿಸಿ ಜೋದರಾಯತವಾಯ್ತು ಕರಿಗಳಲಿ
ಬಿಗಿದು ಕೀಲಚ್ಚುಗಳ ರಥಿಕಾ
ಳಿಗಳು ಮೇಳೈಸಿದರು ಕೈದುವ
ನುಗಿದು ಕಾಲಾಳೆದ್ದು ನಿಂದುದು ಕದನಕನುವಾಗಿ ೨೦

ಕದಡಿದವು ಬಲವೆರಡು ಕಲ್ಪದೊ
ಳುದಧಿಯುದಧಿಯನೊದೆವವೊಲು ತಾ
ಗಿದರು ನೀಗಿದರಸುವ ನಸೆಮಸೆಗಕ್ಕುಡಿಸಿದವರು
ಬಿದಿರಿದರು ಕೊಯ್ದಲೆಗಳನು ಕಾ
ರಿದರು ಕರುಳನು ಕುಸುರಿ ಖಂಡದ
ಕದಳಿ ಮೈಗಳ ಚೂಣಿ ಮಲಗಿತು ತಾರು ಥಟ್ಟಿನಲಿ ೨೧

ಚೂಣಿ ತೆಗೆಯಲಿ ಮಿಸುಕಿದರೆ ನೃಪ
ನಾಣೆ ಬರಿದೇಕಾಳು ಕುದುರೆಯ
ಗೋಣನವರಿಗೆ ಮಾರುವಿರಿ ಕೌರವನ ಥಟ್ಟಿನಲಿ
ದ್ರೋಣನಲ್ಲಾ ರಕ್ಷಕನು ರಣ
ಹೂಣಿಗರು ನಿಲಿ ಭೀಮ ಪಾರ್ಥರ
ಕಾಣಬಹುದೋ ಕರೆಯೆನುತ ಗರ್ಜಿಸಿದನಾಚಾರ್ಯ ೨೨

ರಥವ ಸಂವರಿಸಿದನು ನಿಜ ಸಾ
ರಥಿಯ ಬೋಳೈಸಿದನು ಬಳಿಕತಿ
ರಥ ಮಹಾರಥ ರಾಜಿಗಿತ್ತನು ರಣಕೆ ವೀಳೆಯವ
ಪೃಥೆಯ ಮಕ್ಕಳ ಕರೆ ಮಹೀಸಂ
ಪ್ರಥಿತ ಬಲರನು ಕರೆಯೆನುತ ನಿ
ರ್ಮಥಿತ ರಿಪು ಪರಬಲವ ಹೊಕ್ಕನು ಬಿಟ್ಟ ಸೂಟಿಯಲಿ ೨೩

ರಾಹುವೆತ್ತಲು ಲಲಿತ ತಾರಾ
ವ್ಯೂಹವೆತ್ತಲು ದಳ್ಳಿಸುವ ದವ
ದಾಹವೆತ್ತಲು ನೀರಸದ ತೃಣರಾಶಿ ತಾನೆತ್ತ
ಗಾಹುಗತಕವನುಳಿದು ಕಾದುವ
ಡಾಹವಕೆ ಗುರು ಭೀಷ್ಮರಿಗೆ ಸರಿ
ಸಾಹಸಿಕರಾರುಂಟು ಮುರಿದುದು ಪಾಂಡುಸುತಸೇನೆ ೨೪

ಉದಧಿಯುದರದೊಳಿಳಿದು ತೆರೆಗಳ
ನೊದೆವ ಮಂದರದಂತೆ ಮದಕರಿ
ಕದಳಿಯಲಿ ಕೈಮಾಡುವಂತಿದೆ ಪರರ ಥಟ್ಟಿನಲಿ
ಹೊದರ ಹರೆಗಡಿದೌಕಿದನು ತೋ
ಕಿದನು ಸುಭಟರ ಜೀವವನು ಹಳೆ
ವಿದಿರ ಮೆಳೆಯಲಿ ಮೊಳಗಿದುರಿಯವೊಲುರುಹಿದನು ದ್ರೋಣ ೨೫

ಹೊಕ್ಕ ಸಾಲರುಣಾಂಬುಮಯ ಕೈ
ಯಿಕ್ಕಿದತ್ತಲು ಖಂಡಮಯ ಮೊಗ
ವಿಕ್ಕಿದತ್ತಲು ಮೊರೆವ ಹೆಣಮಯವೇನನುಸುರುವೆನು
ಇಕ್ಕಡಿಯ ಬಸುರುಚ್ಚುಗಳ ನರ
ಸೊಕ್ಕು ಡೊಳ್ಳಾಸದ ಮಹಾಭಯ
ವೆಕ್ಕಸರದಲಿ ಕಾಣಲಾದುದು ವೈರಿಬಲದೊಳಗೆ ೨೬

ಹಸಿದ ಹೆಬ್ಬುಲಿ ಮುಸಗಿದರೆ ಮೃಗ
ವಿಸರವೇನಹುದರಸ ಕೇಳ್ ನಿ
ಪ್ಪಸರದಲಿ ಪಾಳಿಸಿದನಹಿತರನುಗಿದನುಸುರುಗಳ
ಕುಶಲರೇ ಭೀಮಾರ್ಜುನರು ಪಾ
ಲಿಸುವ ಬಿರುದೇ ಕೃಷ್ಣನದು ಹರಿ
ಹಂಸಿಕನೋ ಬೆಸಗೊಂಬೆವೆನುತರೆಯಟ್ಟಿದನು ದ್ರೋಣ ೨೭

ಆರು ಸಾವಿರ ಕುದುರೆಯೊಂಬೈ
ನೂರು ಗಜಘಟೆ ಸಾವಿರದ ಮೂ
ನೂರು ರಥವೊಗ್ಗಾಗಿ ಬಿದ್ದುದು ಲಕ್ಷಪಾಯದಳ
ಏರುವಡೆದವರನು ಪಲಾಯನ
ಸೂರೆಕಾರರನವರ ದಳದಲಿ
ತೋರಿ ಹೇಳುವರೆನ್ನ ಹವಣೇ ಭೂಪ ಕೇಳೆಂದ ೨೮

ಎಲೆಲೆ ದೊದ್ದೆಗರೇಕೆ ಕೊಬ್ಬಿದ
ರಳವನರಿಯದೆ ನುಗ್ಗುಮುರಿದರೆ
ದಳದ ದೊರೆಗದು ಭಂಗವೇ ಬಾಹಿರನ ಹೊಯ್ಯೆನುತ
ಒಳಸರಿವ ನಾಯಕರ ನೆರೆ ಮೂ
ದಲಿಸಿ ಲಗ್ಗೆಯ ಲಹರಿಯಲಿ ಪಡಿ
ತಳಿಸಿದರು ಪಾಂಚಾಲ ಸೃಂಜಯ ಮತ್ಸ್ಯ ಕೇಕೆಯರು ೨೯

ಬಲವ ಕಲಿಯೇರಿಸಿ ಛಡಾಳದೊ
ಳುಲಿವ ಪಟಹ ಮೃದಂಗ ಕಹಳಾ
ವಳಿಯ ಬೊಗ್ಗಿನ ಬೊಬ್ಬಿರಿವ ನಿಸ್ಸಾಳ ಕೋಟಿಗಳ
ತಳಿತ ಝಲ್ಲರಿಗಳ ಪತಾಕಾ
ವಳಿಯ ಬಲಿದು ಪವಾಡಿಗಳ ಕಳ
ಕಳದ ಕೈವಾರದಲಿ ಕವಿದರು ದ್ರೋಣನಿದಿರಿನಲಿ ೩೦

ಅರಿಬಲದ ಥಟ್ಟಣೆಯ ಬಿರುಬಿನ
ಬರವನೀಕ್ಷಿಸಿ ಪೂತು ಪಾಂಚಾ
ಲರ ಸಘಾಡಿಕೆ ಸಾಹಸಿಕರೈ ಹಾ ಮಹಾದೇವ
ದೊರೆಯಲೇ ಬಳಿಕೇನು ಪಾಂಡವ
ರರಸಿಯಯ್ಯನು ದ್ರುಪದನಲ್ಲಾ
ಹರಯೆನುತ ಗಹಗಹಿಸಿ ತಲೆದೂಗಿದನು ಕಲಿದ್ರೋಣ ೩೧

ಇರುಳುಗಳ್ಳನ ಕೂಡೆ ಸೇರಿದ
ಮರುಳಿನಂತಿರೆ ನೀವು ರಣದಲಿ
ತರಿಸಿಕೊಂಬಿರಿ ಹಾಯ್ದುರವದಿರು ನಿಮ್ಮನೆಡೆಯೊಡ್ಡಿ
ಮರಳಿರೈ ಕೈಕೆಯರು ಮತ್ಸ್ಯರು
ಬಿರುದು ಸೃಂಜಯರಕಟಕಟ ಖೂ
ಳರು ವೃಥಾ ನಿಮಗೇಕೆ ಸಾವೆನುತಿರ್ದನಾ ದ್ರೋಣ ೩೨

ಬಿಲ್ಲ ಕೊಪ್ಪಿನ ಮೇಲೆ ಚಾಚಿದ
ಗಲ್ಲದುಪಹಾಸದ ನುಡಿಯ ಮೈ
ಭುಲ್ಲಣೆಯ ರೋಮಾಂಚನದ ಚಡ್ಡಣೆಯ ಚೇತನದ
ಗೆಲ್ಲದಲಿ ಘಾಡಿಸಿದ ಚಿತ್ರದ
ಕೆಲ್ಲೆಗಂಗಳ ನಗೆಯ ಚೌಪಟ
ಮಲ್ಲನಿದ್ದನು ರಿಪುಬಲವ ಲೆಕ್ಕಿಸದೆ ಕಲಿದ್ರೋಣ ೩೩

ಕೆಣಕಿದರು ಪಾಂಚಾಲ ನಾಯಕ
ರಣಕಿಗನ ಕೈಕೊಳ್ಳದುರೆ ಸಂ
ದಣಿಸಿದರು ಸಮರಥರು ಕವಿದರು ರಾಯ ರಾವುತರು
ಕಣೆಗೆದರಿ ಹೊದ್ದಿದರು ಜೋದರು
ಕಣೆದು ಕಾಲಾಳೌಕಿತೊಂದೇ
ಕ್ಷಣದೊಳನಿಬರನೊರಸಿದನು ಬೆರಸಿದನು ದೊರೆಗಳಲಿ ೩೪

ಅಡಸಿದರು ಚತುರಂಗ ಬಲವನು
ಕಡಿದು ಹರಹಿ ವಿರಾಟನನು ಜವ
ಗಿಡಿಸಿ ದ್ರುಪದನನೆಚ್ಚು ವಿರಥರ ಮಾಡಿ ಕೈಕೆಯರ
ನಡೆದು ಬರೆ ನಿಮಿಷದಲಿ ಬಲವವ
ಗಡಿಸಿ ಹೊಕ್ಕುದು ಮುಸಗಿದಂಬುಧಿ
ವಡಬನನು ಮೊಗೆವಂತೆ ಮುತ್ತಿತು ಕಳಶಸಂಭವನ ೩೫

ಮತ್ತೆ ಮುರಿದನು ವೈರಿಬಲದಲಿ
ಹತ್ತು ಸಾವಿರ ಕರಿಘಟೆಯನೈ
ವತ್ತು ಸಾವಿರ ಹಯವನಿರ್ಛಾಸಿರ ಮಹಾರಥರ
ಹತ್ತುಕೋಟಿ ಪದಾತಿಯನು ಕೈ
ವರ್ತಿಸಿದನಂತಕನವರಿಗಿವ
ರತ್ತ ಬಿಟ್ಟನು ರಥವನಾ ದ್ರುಪದಾದಿ ನಾಯಕರ ೩೬

ಆಳನೊಪ್ಪಿಸಿ ಜಾರದಿರು ಪಾಂ
ಚಾಲಪತಿ ಫಡ ನಿಲ್ಲೆನುತ ಶರ
ಜಾಲದಲಿ ಹೂಳಿದನು ದ್ರುಪದನ ಕೆಲದ ಬಲದವರ
ಖೂಳ ಫಡ ಹಾರುವರು ಬರಿ ಮಾ
ತಾಳಿಗಳು ತಾವೇಕೆ ನಾವೇ
ಕಾಳುತನ ತನಗೆತ್ತಲೆನುತಿದಿರಾದನಾ ದ್ರುಪದ ೩೭

ಹಿಂದ ನೆನೆಯಾ ಖೂಳ ನಾವಾ
ರೆಂದು ಮರೆದಾ ಸಾಕದಂತಿರ
ಲೊಂದನಲ್ಲದೆ ನಿನ್ನ ತಲೆಗೆರಡಂಬ ತೊಡಚಿದರೆ
ಇಂದು ನಿನ್ನಯ ಬಾಯ ತಂಬುಲ
ತಿಂದವನು ನೋಡೆನುತ ಹೆರೆಯಂ
ಬಿಂದ ಕಡಿದಿಳುಹಿದನು ಪಾಂಚಾಲಾಧಿಪನ ಶಿರವ ೩೮

ದೊರೆಯುಳಿದನೇ ಸ್ವಾಮಿದ್ರೋಹರು
ತಿರುಗಿಯೆನೆ ಪಾಂಚಾಲಕರಲಿ ಹ
ನ್ನೆರಡು ಸಾವಿರ ರಾಜಪುತ್ರರು ಜರೆದು ಜೋಡಿಸಿತು
ಹರಿಬವೆಮ್ಮದು ಸಾರಿ ನೀವೆಂ
ದರಸು ಮಕ್ಕಳ ನಿಲಿಸಿ ಬಿಲುಗೊಂ
ಡುರವಣಿಸಿ ತಡೆದನು ವಿರಾಟನು ಕಳಶಸಂಭವನ ೩೯

ಅಡಸಿ ಗಿರಿಗಳ ನುಂಗುವನ ಬಾಯ್
ಹಿಡಿಯಂದಿಹುದೇ ಹಣ್ಣು ಹಂಪಲ
ಬಡ ವಿರಾಟನನಾರು ಬಲ್ಲರು ದ್ರೋಣನಿದಿರಿನಲಿ
ನಡೆದು ಬಹುದನು ಕಂಡೆವಾಗಲೆ
ಮಡಿದನೆಂಬುದನರಿಯೆವೈ ಬಿಲು
ದುಡುಕಿ ಕುಂತೀಭೋಜ ಹೊಕ್ಕನು ಮಿಕ್ಕನವರುಗಳ ೪೦

ಅವರ ಹರಿಬವ ಬೇಡಿ ಸೃಂಜಯ
ರವಗಡಿಸಿದರು ಕೈಕೆಯರು ನೃಪ
ನಿವಹದಗಣಿತ ಚೈದ್ಯ ಯಾದವ ಮಗಧ ಮಾಳವರು
ವಿವಿಧ ವಾದ್ಯ ನಿನಾದ ಗಜ ಹಯ
ರವ ರಥಧ್ವನಿ ಜಗದ ಜಂತ್ರವ
ತಿವಿದು ಕೆದರೆ ವಿರೋಧಿಬಲ ಕೆಣಕಿದುದು ಕಳಶಜನ ೪೧

ಕೇಳಿದೆನು ರಭಸವನು ಬಲು ಕೆಂ
ಧೂಳಿಯನು ಕಂಡೆನು ವಿರೋಧಿಗ
ಳಾಳ ಕಂಡೆನು ಕಾಣೆನಿತ್ತಲು ಕಳಶಸಂಭವನ
ಕೇಳಿದೀ ನಿಮಿಷಾರ್ಧದಲಿ ಕೆಂ
ಧೂಳ ಕಾಣೆನು ಕಾಣೆನರಿಭೂ
ಪಾಲರನು ಕೇಳರಸ ಕಂಡೆನು ಚಾಪಧೂರ್ಜಟಿಯ ೪೨

ಅರಸುಮಕ್ಕಳು ಮತ್ಸ್ಯ ಪಾಂಚಾ
ಲರಲಿ ಕೈಕೆಯ ಚೈದ್ಯ ಯಾದವ
ತುರುಕ ಬರ್ಬರ ಗೌಳ ಮಾಗಧ ಪಾರಿಯಾತ್ರರಲಿ
ಉರುಳಿತೊಂದೇ ಲಕ್ಷವುಳಿದೀ
ಕರಿ ವರೂಥ ಪದಾತಿ ತುರಗವ
ನರಸ ಲೆಕ್ಕಿಸಲಾರು ಬಲ್ಲರು ವೈರಿಸೇನೆಯಲಿ ೪೩

ಮುರಿದುದಾ ಬಲವಿಳೆಯೊಡೆಯ ಬೊ
ಬ್ಬಿರಿದುದೀ ಬಲವಪಜಯದ ಮಳೆ
ಗರೆದುದವರಿಗೆ ಹರಿದುದಿವರಿಗೆ ಸರ್ಪರಜ್ಜುಭಯ
ತೆರಳಿತಾಚೆಯ ಮುಂದಣಿ
ಗುರವಣಿಸಿತೀಯೊಡ್ಡು ಕೌರವ
ರರಸನುತ್ಸಾಹವನು ಬಣ್ಣಿಸಲರಿಯೆ ನಾನೆಂದ ೪೪

ಭೂರಿ ವಿರಹಾಗ್ನಿಯಲಿ ಲೋಚನ
ವಾರಿಯಾಜ್ಯಾಹುತಿಗಳಲಿ ರಿಪು
ಮಾರಣಾಧ್ವರವೆಸೆದುದಿರುಳು ರಥಾಂಗ ದೀಕ್ಷಿತನ
ತಾರಕೆಯ ಮುರಿವುಗಳು ಕುಣಿವ ಸ
ಮೀರಣನ ಶಶಿಯೆಡೆಗೆ ರಜನೀ
ನಾರಿ ತೋಳೆಡೆಗೊಟ್ಟಳಂಬುಜಬಂಧು ಹೊರವಂಟ ೪೫

ಹದಿನೆಂಟನೆಯ ಸಂಧಿ

ಸೂ. ರಿಪುಬಲವ ಗೆಲುವಲ್ಲಿ ಶಾಪಾ
ದಪಿ ಶರಾದಪಿಯೆಂಬ ಜಯ ಲೋ
ಲುಪನು ಸಂಗ್ರಾಮದಲಿ ಮಡಿದನು ಪುತ್ರಮೋಹದಲಿ

ಸಾಲದೇ ಸಮರಂಗವಿರುಳಿನ
ಕಾಳೆಗದ ಜಯ ನಮ್ಮದರಿ ಭೂ
ಪಾಲಕನ ಥಟ್ಟಿನಲಿ ಮಡಿದುದು ಬೇಹ ಬೇಹವರು
ಮೇಲುಗಾಳೆಗ ನಮ್ಮದೀಸರ
ಮೇಲೆ ತೆಗೆಸುವುದತಿಮಥನದಲಿ
ಕಾಳಹಂದು ಬಳಿಕೆನಲು ನೃಪತಿಗೆ ನುಡಿದನಾಚಾರ್ಯ ೧

ಅವನಿಪಾಲರು ಕಂಗಳಿಂದವೆ
ಕಿವಿಗೆ ಕರವೊಳ್ಳಿದರು ಕಂಡುದ
ನವರು ನಂಬರು ಕೊಂಡೆಯರ ನುಡಿಗೇಳ್ದು ನಂಬುವರು
ನಿವಗೆ ಹೇಳುವುದಲ್ಲ ಲೋಕದ
ಹವಣನೆಂದೆವು ನಾವು ಪಾಂಡವ
ರವರು ನಿನ್ನವರೆಂಬುದನು ನೀನಿಂದು ನೋಡೆಂದ ೨

ಬಿಲ್ಲನೊದರಿಸಿ ವೈರಿ ಭಟರಿಗೆ
ಚೆಲ್ಲಿದನು ಭೀತಿಯನು ಬರಸಿಡಿ
ಲೆಲ್ಲಿ ತುಡುಕುವುದಾರು ಬಲ್ಲರು ದ್ರೋಣನುರವಣೆಯ
ಘಲ್ಲಣೆಯ ಖುರಪುಟದ ತುರಗದ
ಹಲ್ಲಣೆಯ ಹೇಷಿತಕೆ ಹಗೆಯೆದೆ
ಝಲ್ಲೆನಲು ಕಣೆ ಜಾಡಿ ಕವಿದುದು ಕಟಕದಗಲದಲಿ ೩

ಇಳೆಯೊಳದ್ಭುತವಿದು ಕೃತಾಂತನ
ಫಲಿತ ಶಾಲೀವನವ ಮುತ್ತಿದ
ಗಿಳಿಗಳೋ ಆಚಾರ್ಯನಂಬುಗಳೋ ಮಹಾದೇವ
ನಿಳಿನಿಳಿಲು ಭುಗಿಲೆಂಬ ಛಿಳಿಛಿಳಿ
ಛಿಳಿಛಿಟಿಲು ಭೋರೆಂಬ ಖಣಿಖಟಿ
ಖಿಳಿಲು ಖಿಳಿಲೆಂಬಂಬುಗಳ ದನಿ ತುಂಬಿತಂಬರವ ೪

ಕಡಿದು ಬೀಳುವ ಕೈದುಗಳನರೆ
ಗಡಿದು ಜೋಲುವ ಜೋಡುಗಳ ನೆರೆ
ಸಿಡಿದು ಹಾರುವ ಸೀಸಕದ ನುಗ್ಗಾದ ಹಲಗೆಗಳ
ಉಡಿದ ಸಿಂಧದ ನೆಲಕೆ ಹರಹಿದ
ಕೊಡೆಯ ಚಮರದ ತಾರು ಥಟ್ಟಿಗೆ
ಕೆಡೆದ ಚಾತುರ್ಬಲವನಭಿವರ್ಣಿಸುವನಾರೆಂದ ೫

ಅಳಿದವೈನೂರಾನೆ ಮಗ್ಗುಲ
ನೆಲಕೆ ಕೀಲಿಸಿ ಪಾಡಿಗೈದವು
ಬಲುಗುದುರೆ ಹದಿನೈದು ಸಾವಿರವೇಳುನೂರು ರಥ
ಮಲಗಿದವು ಕಾಲಾಳು ಲೆಕ್ಕದ
ಕಲೆಯ ತೊಡಸಿತು ರಾಜಪುತ್ರರು
ಹಲಬರವರಲಿ ಹೊಯ್ದು ಹೊಕ್ಕರು ಸುರರ ಪಟ್ಟಣವ ೬

ಸಾಲ ಮೇಘದ ಮನೆಗಳಿಗೆ ಬಿರು
ಗಾಳಿ ಬಿದ್ದಿನನಾಗಿ ಬರಲವ
ರಾಲಯದ ಸಿರಿ ಮೆರೆವುದೇ ಧೃತರಾಷ್ಟ್ರ ಚಿತ್ತಯಿಸು
ಬೀಳಹೊಯ್ದರು ಹೊಕ್ಕು ಭೂಮೀ
ಪಾಲನೆಯನಿವರೊಲ್ಲೆವೆಂಬವೊ
ಲೂಳಿಗವ ಮಾಡಿದನು ಪರಬಲದೊಳಗೆ ಕಲಿದ್ರೋಣ ೭

ಮುರಿದು ಬರುತಿದೆ ಸೇನೆ ಸಾಕೀ
ಪರಿಯ ಸೈರಣೆ ನಿಮ್ಮ ಮಾವನ
ಕುರಿದರಿಗೆ ಖತಿಗೊಂಡು ಕಾದಿ ವಿರಾಟ ಕೈಕೆಯರು
ತುರುಗಿದರು ತೆತ್ತೀಸರಲಿ ತೆಗೆ
ಮರೆಯ ಮಾತೇ ವಿಜಯಲಕ್ಷ್ಮಿಯ
ಸೆರಗ ಹಿಡಿದನು ದ್ರೋಣನೆಂದರು ಚರರು ಭೂಪತಿಗೆ ೮

ಹೊಳೆಹೊಳೆದು ತಂಬುಲದ ರಸದಲಿ
ಮುಳುಗಿ ಮೂಡುವ ಥಗೆಯ ತೊಡೆಹದ
ಮೆಲುನಗೆಯ ಕಳವಳವನರೆ ಮುಕ್ಕುಳಿಸಿದಾಲಿಗಳ
ಓಳಿದ ಛಲದ ವಿಡಾಯಿ ಧೈರ್ಯದ
ತಳಿತ ಭೀತಿಗೆ ಕಾಲುವೊಳೆಯಾ
ದಳಿಮನದ ಭೂಪಾಲನಿರವನು ಕಂಡನಾ ಪಾರ್ಥ ೯

ನಾಯಿಗಳ ಹೊಯ್ ನೂಕು ರಣದಲಿ
ಸಾಯಬೇಡಾ ಕ್ಷತ್ರಿಯರು ತಾ
ವಾಯುಧಂಗಳೆ ಹಿಡಿದರೋ ಮೋಣೇಕದಂಡಿಗಳೊ
ಜೀಯ ಖಾತಿಯಿದೇಕೆ ಬೀಳಲಿ
ನಾಯಕರು ನಿನಗೇನು ಹರನಡ
ಹಾಯಲಿಂದರಿಬಲವನುರುಹುವೆನೆಂದನಾ ಪಾರ್ಥ ೧೦

ನಿಲ್ಲು ಫಲುಗುಣ ನಿನ್ನ ಪರಿಯ
ತೆಲ್ಲಿಯದು ರಣವಕಟ ಹಾರುವ
ನಲ್ಲಿ ಕೆಲಬರ ಹೊಯ್ದು ಕೊಂದನು ಬಿನುಗು ಬಿಚ್ಚಟೆಯ
ಬಲ್ಲೆನಾತನ ಬಲುಹನೀಶ್ವರ
ನಲ್ಲಿ ಹರಿಮೇಖಳೆಯ ಸಾಕಿ
ನ್ನೆಲ್ಲವೇತಕೆಯೆನುತ ಧೃಷ್ಟದ್ಯುಮ್ನನನುವಾದ ೧೧

ನೇಮವಾಯಿತು ಸಾತ್ಯಕಿಗೆ ಶ್ರುತ
ಸೋಮಕಾದಿ ಕುಮಾರರಿಗೆ ಸಂ
ಗ್ರಾಮವೀರ ಶಿಖಂಡಿ ಸೃಂಜಯ ಚೇಕಿತಾನರಿಗೆ
ಆ ಮಹಾರಥರೈದಿದರು ಘನ
ತೋಮರದಿ ತುರುಗಿದ ವರೂಥ
ಸ್ತೋಮದಲಿ ಬಹುವಿಧದ ವಾದ್ಯ ವಿಡಾಯಿ ರಭಸದಲಿ ೧೨

ಸರಕಟಿಸಿ ನೂಕಿತು ಚತುರ್ಬಲ
ವರರೆ ಹಾರುವನೆಲ್ಲಿ ಯಾವೆಡೆ
ದೊರೆ ಸುಯೋಧನನೆಲ್ಲಿ ರಾಧೆಯ ಮಗನ ಬರಹೇಳು
ಗುರುಸುತನ ಕರೆ ಕಾದುಹೇಳೋ
ದುರುಳ ದುಶ್ಶಾಸನನನೆನುತ
ಬ್ಬರಿಸಿ ಕವಿದುದು ವೈರಿ ಬಲವಾಚಾರ್ಯನಿದಿರಿನಲಿ ೧೩

ಅಂಗವಣೆಯೊಳ್ಳಿತು ಮಹಾದೇ
ವಂಗೆ ಮೊಗಸುವಡರಿದು ಮೊದಲಲಿ
ಸಿಂಗದಾಯತದಂಬು ಸುಳಿದರೆ ಮೊಲನ ಮುಂಚುವಿರಿ
ಭಂಗವಿಲ್ಲದೆ ಬಿದ್ದ ನಿಮ್ಮ
ಯ್ಯಂಗೆ ಹಳಿವನು ಹೊರಿಸದಿಹ ಮನ
ದಂಗವಣೆಯುಂಟಾಗೆ ಮೆಚ್ಚುವೆನೆಂದನಾ ದ್ರೋಣ ೧೪

ಗಳಹತನ ನಿಮ್ಮಲ್ಲಿ ನೆಲೆ ನೀವ್
ಕಲಿತ ವಿದ್ಯವು ಮಾತಿನಲಿ ನೀವ್
ಗೆಲುವುದಿದು ತಪ್ಪಲ್ಲ ಮುಖದಿಂ ದ್ವಿಜರು ಜನಿಸಿದಿರಿ
ಗೆಲವು ತೋಳಿಂದೆಮಗೆ ಜನ್ಮ
ಸ್ಥಳವಲೇ ಭುಜವರಸುಗಳಿಗಿ
ನ್ನಳುಕದಿದಿರಲಿ ನಿಂದಿರಾದಡೆ ಗೆಲವು ನಿಮಗೆಂದ ೧೫

ಎನ್ನು ಮತ್ತೊಮ್ಮೆನ್ನು ತನ್ನಾ
ಣೆನ್ನು ಗೆಲವೇ ನಮಗೆ ನಿಂದರೆ
ನಿನ್ನ ಸಮ್ಮುಖದಲಿ ಮಹಾದೇವಹುದು ಬಳಿಕೇನು
ತನ್ನಲುಂಟೇ ಖರೆಯತನ ಬರಿ
ದೆನ್ನನಿವನಿದ ಬಾರಿಯ
ಮುನ್ನ ಬಲ್ಲೈ ನೀನೆನುತ ಸಾರಥಿಯ ಕೈವೊಯ್ದು ೧೬

ಈತ ಸೇನಾಪತಿ ಕಣಾ ತಾ
ನೀತನೈವರ ಮೈದುನನು ವಿ
ಖ್ಯಾತನಿವ ಪಾಂಚಾಲಕುಲದಲಿ ದ್ರುಪದತನುಜನಿವ
ಈತ ಸಾತ್ಯಕಿ ಯಾದವರ ಕುಲ
ದಾತನೀತ ಶಿಖಂಡಿ ಮೊದಲಾ
ದೀತಗಳು ನೆರೆ ಖರೆಯರೆಂದನು ನಗುತ ಸಾರಥಿಗೆ ೧೭

ಮುಟ್ಟಿ ಬಂದುದು ಸೇನೆ ಕವಿದುದು
ಕಟ್ಟಳವಿಯಲಿ ಕಲಿಗಳೆದು ಬಳಿ
ಕಟ್ಟಿ ತಿಂಬ ಮಹಾಂತಕಂಗೌತಣವ ಹೇಳ್ವಂತೆ
ಕಟ್ಟೆಯೊಡೆದಂಬುಧಿಯೊ ಮೇಣ್ ಜಗ
ಜಟ್ಟಿ ಸುರಿದಂಬುಗಳೊ ನಿಮಿಷಕೆ
ಕೆಟ್ಟುದಾಚೆಯ ಬಲದ ತರಹರವರಸ ಕೇಳೆಂದ ೧೮

ನುಡಿಗೆ ಮುಂಚುವ ಬಾಣ ಮಾರುತ
ನಡಸಿ ಬೀಸುವ ಲಾಗು ತಲೆಗಳ
ತೊಡಬೆಗಳಚುವ ಬೇಗವನು ಬಣ್ಣಿಸುವರೆನ್ನಳವೆ
ಕಡಲ ಕಡಹದಲುರಿವ ಗರಳವ
ನುಡುಗಿದವರಿವರೋ ಶಿವಾಯೆಂ
ದೊಡನೊಡನೆ ಪಡೆ ನಡುಗಲೊರಸಿದನಾ ಮಹಾರಥರ ೧೯

ಕರಿಗಳೈಸಾವಿರ ತುರಂಗವು
ವೆರಡು ಸಾವಿರವೆಂಟು ಸಾವಿರ
ವರವರೂಥದ ಥಟ್ಟು ಮುರಿದುದು ಲಕ್ಷ ಪಾಯದಳ
ಅರಸುಗಳು ಮೂನೂರು ಪುನರಪಿ
ಕರಿ ತುರಗ ರಥ ಮತ್ತೆ ಮೂವ
ತ್ತೆರಡು ಸಾವಿರವಳಿದುದರಿ ಪಾಂಚಾಲ ಸೇನೆಯಲಿ ೨೦

ಮತ್ತೆ ಕವಿದುದು ಹೆಣನ ತುಳಿದೊ
ತ್ತೊತ್ತೆಯಲಿ ರಿಪುಸೇನೆ ಮಂಜಿನ
ಮುತ್ತಿಗೆಯ ರವಿಯಂತೆ ಕಾಣೆನು ಕಳಶಸಂಭವನ
ಮತ್ತೆ ನಿಮಿಷಾರ್ಧದಲಿ ಕಾಲನ
ತುತ್ತು ಜೋಡಿಸಿತೇನನೆಂಬೆನು
ಹತ್ತು ಕೋಟಿಯನಿಳುಹಿದನು ರಿಪುಚಾತುರಂಗದಲಿ ೨೧

ಘಾಸಿಯಾದುದು ಸೇನೆ ಸುಡಲೆನು
ತಾ ಸುಭಟರಿದಿರಾಗಿ ಕಾದಿದ
ರೈಸೆ ಬಳಿಕೇನವರ ಸತ್ವ ತ್ರಾಣವೇನಲ್ಲಿ
ಸೂಸುಗಣೆಗಳ ಸೊಗಡು ಹೊಯ್ದುಪ
ಹಾಸಕೊಳಗಾದರು ಮಹಾರಥ
ರೀಸು ಭಂಗಕೆ ಬಂದುದಿಲ್ಲ ನೃಪಾಲ ಕೇಳೆಂದ ೨೨

ಕಂಡುದಿವರನು ರಾಯ ಮೋಹರ
ವಂಡುಗೊಂಡುದು ದೊರೆಗಳಿದು ಕೋ
ದಂಡ ರುದ್ರನ ರಣ ಕಣಾ ತಾವೇನನೊದಗುವರು
ಉಂಡ ಬಾಸಣದೇರು ಮದ್ದಿನ
ಗಂಡನೋ ದ್ರೋಣಾಸ್ತ್ರವನು ಸವಿ
ಗಂಡನೋ ಸಾತ್ಯಕಿಯೆನುತ ಗರ್ಜಿಸಿದನಾ ಭೀಮ ೨೩

ನುಡಿದು ಭಂಗಿಸಲೇಕೆ ಸದರವ
ಕೊಡುವುದಾಹವವೊಮ್ಮೆ ಮಗುಳವ
ಗಡಿಸುವುದು ವಿಕ್ರಮಕೆ ಕುಂದೇನಿದು ಮುಹೂರ್ತ ವಶ
ಪಡೆ ಸವೆದುದಿನ್ನೇನೆನುತ ಬಿಲು
ದುಡುಕಿ ಹೊಕ್ಕನು ಪಾರ್ಥನನಿಲಜ
ನೊಡನೆ ಬಳಿಸಂಧಿಸಿತು ಸನ್ನಾಹದಲಿ ಪರಿವಾರ ೨೪

ಭೀತಿ ಮಾಣಲಿ ಭೀಮ ಫಲುಗುಣ
ರಾತುಕೊಂಡರು ಬವರವನು ನೆರೆ
ಸೋತವರು ಸಂವರಿಸಿ ಕೊಂಬುದೆನುತ್ತ ಚರರುಲಿಯೆ
ಚಾತುರಂಗದ ಚರಣಹತಿ ನಿ
ರ್ಧೂತ ಧೂಳೀಮಯುವಖಿಳ ದಿಗು
ಜಾತವನೆ ಥಟ್ಟಣೆಯಲೇರಿತು ಪಾಂಡುಸುತಸೇನೆ ೨೫

ಆಳಿಯೋ ನಿಮಗೆನ್ನ ಸರಳಿಂ
ದಾಳು ಕುದುರೆಯ ಕೊಲಿಸುವುದು ನಿಮ
ಗಾಳುತನವುಂಟೆಂಬ ಗರ್ವವನಿಲ್ಲಿ ತೋರಿಸಿರೆ
ಆಳು ನೋಡುತ್ತಿರಲಿ ನಮ್ಮೀ
ಕಾಳೆಗವನೆಲೆ ಪಾರ್ಥ ಪವನಜ
ಹೇಳೆನುತ ಕೈವರ್ತಿಸಿದನಂಬುಗಳಿಗಿವರೊಡಲ ೨೬

ನರನನೆಚ್ಚನು ಪವನಜನ ತನು
ಬಿರಿಯಲೆಚ್ಚನು ಸಾರಥಿಗಳಿ
ಬ್ಬರಲಿ ಹೂಳಿದನಂಬ ನೆರೆ ನೋಯಿಸಿದ ರಥ ಹಯವ
ನರನ ಕಣೆಯಂನು ಭೀಮನಂಬನು
ಹರೆಗಡಿದು ಮಗುಳೆಚ್ಚನವರನು
ಸರಳ ಪುನರಪಿ ಸವರಿ ಸೆಕ್ಕಿದನೊಡಲೊಳಂಬುಗಳ ೨೭

ದಿಟ್ಟಿ ಮುಷ್ಟಿಯ ಸರಿಸದಲಿ ತಲೆ
ಮುಟ್ಟು ಕವಿದರು ಭೀಮ ಫಲುಗುಣ
ರಿಟ್ಟ ತೊಡರಿನೊಳಾರು ಸಿಲುಕರು ದಿವಿಜ ದನುಜರಲಿ
ನೆಟ್ಟನೈದುವ ಹಿಳುಕುಗಳ ತರಿ
ದೊಟ್ಟಿದನು ದೆಖ್ಖಾಯಿಯಲಿ ಗರಿ
ಗಟ್ಟಿತೀತನ ಖಾತಿ ಮೆರೆದುದು ಕೇಣವಿಲ್ಲೆನಿಸಿ ೨೮

ರಾಯನನು ಬರಹೇಳು ನಾವ್ ಕೈ
ಗಾಯೆವೋ ಕಾಯಿದೆವೊ ಕಾಣಲಿ
ಬಾಯಿಬಡುಕರು ಬಂದು ನೋಡಲಿ ಕರ್ಣ ಶಕುನಿಗಳು
ಆಯುಧವ ಹಿಡಿದವರು ಮೇಣೆವ
ರಾಯತದೊಳೊಡವೆರಸಿ ನೋಡಲಿ
ರಾಯನಾಣೆಯೆನುತ್ತ ಮೂದಲಿಸಿದನು ತನ್ನವರ ೨೯

ಬಾಲಸೂರ್ಯನವೊಲ್ ಪ್ರತಿಕ್ಷಣ
ದೇಳಿಗೆಯ ತೇಜದ ವಿಕಾರ ಚ
ಡಾಳಿಸಿತು ವಿಕ್ರಮದ ಝಳ ಜಗವಳುಕೆ ಝೊಂಪಿಸಿತು
ಹೇಳಲೇನರ್ಜುನನ ಭೀಮನ
ಸೋಲವದು ತಾ ಮೃತ್ಯುವೀ ಪರಿ
ಕಾಳೆಗವ ನಾನರಿಯೆನಮರಾಸುರರ ಥಟ್ಟಿನಲಿ ೩೦

ಸಾಕು ನಿಮಗಾಗದು ವೃಥಾ ನೀ
ವೇಕಹಂಕರಿಸುವಿರಿ ಸೇನಾ
ನೀಕ ಹೊದ್ದಲಿ ಹೊಗಲಿ ಧೃಷ್ಟದ್ಯುಮ್ನ ಮೊದಲಾಗಿ
ಆಕೆವಾಳರು ನಿಲಲಿ ಕುಪಿತ ಪಿ
ನಾಕಿಯರಿಯಾ ದ್ರೋಣನೆನುತ ನ
ರಾಕೃತಿಯ ಪರಬೊಮ್ಮರೂಪನು ತಿರುಹಿದನು ರಥವ ೩೧

ಮೇಲೆ ಬಿದ್ದುದು ಮುಳಿಸಿನಲಿ ಪಾಂ
ಚಾಲರಾಯನ ಥಟ್ಟು ನಿಶಿತ ಶ
ರಾಳಿಯಲಿ ಹೂಳಿದನು ಧೃಷ್ಟದ್ಯುಮ್ನನಂಬರವ
ಬಾಲಕರಲೇ ಖಡ್ಗಧಾರೆಯ
ಮೇಲೆ ಮೋಹಿದ ಮಧುವ ಸವಿಯಲಿ
ನಾಲಗೆಯಲಿವರೊಲ್ಲರೆಂದನು ನಗುತ ಕಲಿದ್ರೋಣ ೩೨

ತೆರಹ ಕೊಟ್ಟೊಳಹೊಗಿಸಿ ಸದೆದನು
ಬರಸಿಡಿಲು ಜಡಿವಂತೆ ರಿಪುಬಲ
ಮೊರಲಿ ಕೆಡೆದುದು ಘಾಯವಡೆದುದು ಬೇಹ ನಾಯಕರು
ದುರುದುರಿಪ ತಲೆಮಿದುಳ ದಂಡೆಯ
ಹರಿಗರುಳ ನೆಣವಸೆಯ ಮೂಳೆಯ
ಮುರಿಕಂಗಳ ಕಡಿಖಂಡಮಯವಾಯ್ತಖಿಳ ಚತುರಂಗ ೩೩

ಬೆರಳ ಬಾಯ್ಗಳ ಬಿಸುಟ ಕೈದುಗ
ಳರೆಗಿರಿದ ಹಲ್ಲುಗಳ ಕೂಡಿದ
ಕರಪುಟದ ಬಿಡುದಲೆಯ ಬಸಿವೇರುಗಳ ಶೋಣಿತದ
ನರಳುವಾರೋಹಕರ ರಾವ್ತರ
ವರ ಮಹಾರಥ ಪಾಯದಳದು
ಬ್ಬರದ ಭಂಗವನೇನನೆಂಬೆನು ವೈರಿಸೇನೆಯಲಿ ೩೪

ಮುಂದೆ ಹೊಗುವತಿಬಳರು ಹಾರಿತು
ಹಿಂದಣವರನು ಹಿಂದೆ ನಿಲುವರು
ಮುಂದಣವರಾಸೆಯಲಿ ನಿಂದುದು ಪಾರ್ಥಪರಿಯಂತ
ಅಂದು ಪಾರ್ಥನು ಕೃಷ್ಣ ಬಲದಲಿ
ನಿಂದನೇವೇಳುವೆನು ನಿನ್ನವ
ರೆಂದು ಗೆಲ್ಲರು ಗಾಹುಗತಕವನುಳಿದು ಕಾದುವರೆ ೩೫

ಆರು ಸಾವಿರ ತೇರು ಗಜ ಹದಿ
ನಾರುಸಾವಿರ ಲಕ್ಷ ಕುದುರೆಗ
ಳಾರು ಕೋಟಿ ಪದಾತಿ ಮುಗ್ಗಿತು ಮತ್ತೆ ಸಂದಣಿಸಿ
ಆರು ಲಕ್ಷ ತುರಂಗ ನೃಪರೈ
ನೂರು ಗಜಘಟೆ ಲಕ್ಷ ರಥ ಹದಿ
ಮೂರು ಸಾವಿರವಳಿದುದರಿ ಪಾಂಚಾಲ ಸೇನೆಯಲಿ ೩೬

ಅಂಗವಿಸುವವರಿಲ್ಲ ಭಟರಿಗೆ
ಭಂಗವಿಕ್ಕಿತು ಕೌರವೇಂದ್ರಗೆ
ಸಂಗರದ ಸಿರಿ ಸೊಗಸಿನಲಿ ಕಡೆಗಣ್ಣ ಸೂಸಿದಳು
ಮುಂಗುಡಿಯಲಿನ್ನಾರು ನಮಗಾ
ಪಂಗದಲಿ ಜಯವೇನು ಹದನರ
ಸಂಗೆ ಬಿನ್ನಹ ಮಾಡಿಯೆಂದರು ನಿಖಿಳ ಮಂತ್ರಿಗಳು ೩೭

ಕರಸಿದನು ಹರಿ ಧರ್ಮಪುತ್ರನ
ನರಸ ಕೇಳಿಂದಿನಲಿ ಗುರುವನು
ಸರಳ ಮೊನೆಯಲಿ ಗೆಲಲು ನೂಕದು ಭೂತನಾಥಂಗೆ
ತೆರಳಿ ಬರುತಿದೆ ನಮ್ಮ ಬಲ ಸಂ
ಗರದ ಜಯವಹುದೆಂತು ಹೇಳೈ
ಧರಣಿಪತಿ ನೀನೆನಲು ನೀವೇ ಬಲ್ಲಿರಿದನೆಂದ ೩೮

ಧುರದ ಜಯವಹುದೊಂದು ಪರಿಯಲಿ
ನಿರುತವಲ್ಲದ ನುಡಿಯ ನುಡಿದರೆ
ಪರಿಹರಿಸಬಹುದೆಂದನಸುರಾರಾತಿ ನಸುನಗುತ
ನರನದೆಂತೆನೆ ಗುರುತನುಜ ಸಂ
ಗರದೊಳೊರಗಿದನೆಂದು ದ್ರೋಣಂ
ಗರುಹು ಫಲುಗುಣ ಮನದೊಳಳುಕದೆ ಬೇಗ ಮಾಡೆಂದ ೩೯

ಕಿವಿಯ ಮುಚ್ಚಿದನರ್ಜುನನು ಹರಿ
ಯುವಗಡಿಸೆ ಕೈಕೊಂಡನರಸನು
ಪವನಸುತನಾ ಮಾತಕೊಂಡನು ಹೊಕ್ಕನಾಹವವ
ತವಕದಲಿ ತೆಗೆದೆಸುತ ರಿಪುಶರ
ನಿವಹವನು ಖಂಡಿಸುತಲಿಂದಿನ
ಬವರದಲಿ ಕಡಿವಡೆದುದಶ್ವತ್ಥಾಮ ಕೇಳೆಂದ ೪೦

ಶಿವ ಶಿವಾ ಕರ್ಣಜ್ವರಾಯತ
ರವವಿದೆತ್ತಣದೋ ಕುಮಾರನ
ತಿವಿದರಾರೋ ತಾನಿದದ್ಭುತವೆನುತ ತನ್ನೊಳಗೆ
ತವಕಿಸುತ ತಿಳಿದನು ವೃಕೋದರ
ನಿವ ದುರಾತ್ಮನು ತನ್ನ ಮಗನಾ
ಶಿವನೊಡನೆ ಸಮಜೋಳಿ ಹುಸಿ ಹೋಗೆಂದನಾ ದ್ರೋಣ ೪೧

ಮತ್ತೆ ಮಸೆದುದು ಖಾತಿ ಕರ್ಬೊಗೆ
ಸುತ್ತಿದುಸುರಲಿ ಮೀಸೆಗಡಿದೌ
ಡೊತ್ತಿ ಸೆಳೆದನು ಶರವನೆಚ್ಚನು ಪವನನಂದನನ
ಹತ್ತೆಗಡಿದನು ಭೀಮ ಮುಗುಳಿವ
ನೊತ್ತಿ ಹೊಕ್ಕರೆ ಕೈ ನೆರವ ಹಾ
ರುತ್ತ ಮುರಿದನು ಬಳಿಕ ಧೃಷ್ಟದ್ಯುಮ್ನನಿದಿರಾದ ೪೨

ಎನಿತು ಬಾರಿ ಪಲಾಯನದ ಸಿರಿ
ನಿನಗೆ ಸೇರಿತು ವೀರ ಭಂಡನೊ
ಳೆನಗೆ ನೂಕದು ಸಾಕು ಧೃಷ್ಟದ್ಯುಮ್ನ ನಿಲ್ಲೆನುತ
ಅನಿಲ ಜವದಲಿ ರಥವ ಬಿಟ್ಟನು
ಜನಪತಿಯ ಮೋಹರಕೆ ಕವಿದುದು
ತನತನಗೆ ರಾಯನ ವಿಪತ್ತಿನೊಳಖಿಳ ಭಟನಿಕರ ೪೩

ಒಲೆದು ಗಜವಿಟ್ಟಣಿಸಿದವು ತಲೆ
ವಲಗೆಯಲಿ ಕಲಿ ಪಾಯದಳ ಪಡಿ
ತಳಿಸಿತೊಳಹೊಕ್ಕೌಕಿದವು ಬದ್ದರದ ಬಂಡಿಗಳು
ಸೆಳೆದಡಾಯ್ದದ ರಾವುತರು ಕೈ
ನಿಲುಕಿದರು ಮುತ್ತಿದರು ಪರಿಮು
ಡಳಿಸಿ ಬೊಬ್ಬಿರಿದಾರಿದರು ಸಿಕ್ಕಿದನು ಹಗೆಯೆನುತ ೪೪

ಸಾರಥಿಯ ತುಂಡುಕಿದರು ತಿವಿದರು
ತೇರ ಕುದುರೆಯನಿಭದ ಬರಿಕೈ
ತೇರ ಹಿಡಿದವು ಘಲ್ಲಿಸಿದವನುಕರುಷ ಕೂಬರವ
ಭಾರಿಯಿಾಚಿನ ಮೇಲೆ ಬಿದ್ದವು
ವಾರುವಂಗಳ ಖುರನಿಕರವಸಿ
ಧಾರೆ ಮೊಗದಲಿ ಮಿಂಚಿದವು ಮುತ್ತಿದವು ಕಳಶಜನ ೪೫

ದ್ರೋಹಿ ಸಿಲುಕಿದನೆನುತೆ ಜೀವ
ಗ್ರಾಹವೋ ಸಾಹಸ ವಿಚಾರಿಸು
ಬೇಹವರನೆನುತೊರಲಿ ಧೃಷ್ಟದ್ಯುಮ್ನನಿದಿರಾಗೆ
ಸಾಹಸಿಕರಳುಕಿದರು ಕೌರವ
ಮೋಹರದ ಮೊನೆಯಾಳುಗಳು ಸ
ನ್ನಾಹದಲಿ ಪಡಿತಳಿಸಿ ಕರ್ಣ ಕೃಪಾದಿ ನಾಯಕರು ೪೬

ಗಾಳ ಗಂಟಲಲಿಳಿವುದೇ ಮ
ತ್ಸ್ಯಾಳಿಗಕಟೀ ದೊದ್ದೆ ಕವಿದರೆ
ಕೋಲುಗುರು ಕಳವಳಿಸುವನೆ ಬಯಸುವನೆ ಕೆಲಬಲನ
ಮೇಲುಗಾಣದೆ ಕವಿದಡಿದಿರೇ
ಬಾಲಹರಿಣನ ಹಿಂಡು ಹೆಬ್ಬುಲಿ
ಗಾಳ ತತ್ತರಿದರಿದು ತಳಪಟ ಮಾಡಿದನು ದ್ರೋಣ ೪೭

ಆರ ನೆರವಿಯೊಳಂಧಕಾರದ
ಭಾರವನು ರವಿ ಗೆಲುವನಿನ್ನೀ
ವೈರಿಬಲಭಂಜನಕೆ ಗುರು ಹಂಗಹನೆ ಕೆಲಬಲಕೆ
ಭೂರಿ ರಿಪುಚತುರಂಗಬಲಸಂ
ಹಾರದಲಿ ಒರವೆದ್ದ ರಕುತದ
ಪೂರದಲಿ ಮುಳುಗಿದರು ಪಾಂಚಾಲಾದಿ ನಾಯಕರು ೪೮

ಘಾಯವಾಯ್ತರ್ಜುನಗೆ ಮಿಗೆ ಪೂ
ರಾಯದೇರಿನೊಳೊದೆದು ಕೊಂಡರು
ವಾಯುತನುಜ ಶಿಖಂಡಿ ಸಾತ್ಯಕಿ ದ್ರುಪದನಂದನರು
ಬಾಯ ಬಿಟ್ಟುದು ಭೀತಿಯಲಿ ಕೌಂ
ತೇಯಸುತರಿನ್ನುಳಿದ ಸುಭಟರ
ನಾಯಕರ ಪಾಡೇನು ನಸಿದುದು ಪಾಂಡುಸುತಸೇನೆ ೪೯

ಮೊದಲಲೌಕಿದ ಚಾತುರಂಗವ
ಸದೆದನೊಂದೇ ಲಕ್ಷವನು ಮಿಾ
ರಿದರೆ ಮೋದಿದನೆಂಟುಲಕ್ಷವನೊಂದು ನಿಮಿಷದಲಿ
ಕದನದಲಿ ದಿಗ್ದೇವಿಯರುರಿಗಿ
ಕ್ಕಿದನು ಲಕ್ಷವನೇಳು ಲಕ್ಷವ
ನೊದಗಿಸಿದನಂತಕನ ಪುರಿಗವನೀಶ ಕೇಳೆಂದ ೫೦

ಧಾರುಣೀಶರು ಮಡಿದರೊಂದೇ
ಸಾರಿಗೆಯಲೈನೂರು ಮತ್ತೆ ಮ
ಹಾರಥರು ಮೂನೂರು ಪುನರಪಿ ನೂರು ನಾನೂರು
ಮಾರಿ ಬಿರುದೇಗಿದಳು ಯಮನವ
ರಾರದೊಯ್ಯಲು ನಾಕದಲಿ ಹೊರ
ಕೇರಿಗಟ್ಟಿದುದೆನಲು ಕೊಂದನು ರಿಪುಚತುರ್ಬಲವ ೫೧

ಇಳಿದರಿತ್ತಲು ಗಗನದಿಂ ಹೊಳೆ
ಹೊಳೆವ ಥಾಳದ ರೂಢಿಯಲಿ ಜಗ
ಮುಳುಗೆ ಭಸ್ಮವಿಭೂಷಿತಾಂಗದ ಜಡಿವ ಕೆಂಜೆಡೆಯ
ಪುಲಿದೊಗಲ ಸುಲಿಪಲ್ಲ ಮುಕ್ತಾ
ವಳಿಯ ಮಣಿ ಜಪಮಾಲಿಕೆಯ ನಿ
ರ್ಮಳ ತಪೋಧನರೈದಿದರು ಸಂಗ್ರಾಮಭೂಮಿಯನು ೫೨

ಅತ್ರಿ ಭಾರದ್ವಾಜ ವಿಶ್ವಾ
ಮಿತ್ರ ಗೌತಮ ಕಣ್ವ ಕಶ್ಯಪ
ಮಿತ್ರಸೂನು ವಸಿಷ್ಠ ಗಾರ್ಗ್ಯಾಂಗಿರಸ ಭಾರ್ಗವರು
ಅತ್ರಿಸುತ ವರ ವಾಲಖಿಲ್ಯರು
ಚಿತ್ರಚರಿತರು ಬಂದರಲ್ಲಿಗೆ
ಮಿತ್ರಭಾವದಲವರನಭಿವಂದಿಸಿದನಾಚಾರ್ಯ ೫೩

ವರಮುನೀಶ್ವರರವನಿಯಲಿ ಮೂ
ವರಿಗೆ ಗೋಚರವಾದರಿತ್ತಲು
ಮುರವಿರೋಧಿಗೆ ನರಗೆ ಕುರುಸೇನಾಧಿನಾಥಂಗೆ
ಅರಿಯರುಳಿದವರೀತನಿಂ ಸ
ತ್ಕರಿಸಿಕೊಂಡರು ನುಡಿದರಾ ಮುನಿ
ವರರು ಕಡಿದರು ಕೌರವಾನ್ವಯ ಕಲ್ಪ ಭೂರುಹವ ೫೪

ಪಾತಕವಲಾ ದ್ರೋಣ ನಿನಗೀ
ಭೂತಹಿಂಸೆಯದೇಕೆ ಪಾರ್ಥಿವ
ಜಾತಿಯಲಿ ಜನಿಸಿದವರೀ ನಿನ್ನಂತೆ ನಿರ್ದಯರೆ
ಸೋತರೇನದು ಋಷಿತನಕಪ
ಖ್ಯಾತಿಯೋ ಶಸ್ತ್ರೋಪಜೀವನ
ವೇತಕಿದು ನಿನಗೆಂದು ಭಾರದ್ವಾಜಮುನಿ ನುಡಿದ ೫೫

ಲೋಕವೆಂಬುದು ವರ್ಣಧರ್ಮವ
ನೌಕಿ ನಡೆವುದು ವೈದಿಕಕೆ ನಾ
ವಾಕೆವಾಳರು ತಪ್ಪಿ ನಡೆದರೆ ಭ್ರಮಿಸುವರು ಬುಧರು
ಲೋಕ ನಮ್ಮನುದಾಹರಿಸುವುದು
ಕಾಕನೇ ಬಳಸುವುದು ದುರ್ಯಶ
ವೇಕೆ ನಿಮಗಿದು ವಿಹಿತ ಕರ್ಮಶ್ರುತಿ ಪರಿತ್ಯಾಗ ೫೬

ಶ್ರುತಿಪಠಣವೋ ತರ್ಪಣವೊ ಮೇ
ಣತಿಥಿ ಪೂಜೆಯೊ ಭೂತಯಜ್ಞವೊ
ಹುತವಹಾರಾಧನೆಯೊ ರಣವೀಯೈಯ್ದರೊಳಗೇನು
ಶ್ರುತಿ ತದರ್ಥಸ್ಮೃತಿಗಳಲಿ ಪಂ
ಡಿತರು ನಡೆವುದ ಮಾದು ಮೂರ್ಖರ
ಗತಿಯನನುಕರಿಸಿದರೆ ಬಳಿಕ ವಿಶೇಷವೇನೆಂದ ೫೭

ಆದುದವಿವೇಕದಲಿ ಸತ್ಪಥ
ವೈದಿಕಾತಿಕ್ರಮಣವಿನ್ನು ಗ
ತೋದಕದಲುರೆ ಸೇತುಸಂಬಂಧದಲಿ ಫಲವೇನು
ಈ ದುರಾಗ್ರಹ ನಿಲಲಿ ಹಾಯಿಕು
ಕೈದುವನು ಸುಸಮಾಧಿ ಯೋಗದ
ಲೈದು ನಿಜವನು ದೇಹ ನಿಸ್ಪೃಹನಾಗು ನೀನೆಂದ ೫೮

ದೇಹವಿದು ಭೂತೇಂದ್ರಿಯಾದಿಯ
ಗೇಹವುಪಚಿತ ಕರ್ಮ ಫಲ ಸಂ
ದೋಹದಲಿ ತಿರುಗುವುವು ಸುರ ನರ ತಿರ್ಯಗಾದಿಯಲಿ
ದೇಹ ಕರಣಾದಿ ಪ್ರಪಂಚವು
ನಾಹವೆಂನಲಳಿದುಳಿದ ನಿತ್ಯ ನಿ
ರೀಹ ವಿಮಳ ಜ್ಞಾನರೂಪನು ನಿನ್ನ ನೋಡೆಂದ ೫೯

ನನೆದುದಂತಃಕರಣ ರೋಮಾಂ
ಚನದಲಾನಂದಾಶ್ರುಜಲದಲಿ
ನನೆದು ಹೊಂಪುಳಿಯೋಗಿ ಕಣ್ಣೆವೆ ಮುಚ್ಚಿ ಹೊರೆಹೆಚ್ಚಿ
ನೆನೆದೆನೆನ್ನನು ನಿಮ್ಮ ಪದದರು
ಶನದಿ ಧನ್ಯನು ಬಿಜಯಮಾಡುವು
ದೆನುತ ಕಂದೆರೆದೀಕ್ಷಿಸಿದನಂದುಭಯಸೈನಿಕವ ೬೦

ತಿರುಗಿದುದು ಮುನಿನಿಕರವತ್ತಲು
ಮರಳಿತೀತನ ಬುದ್ಧಿಯಿತ್ತಲು
ತೆರೆಯ ಹಿಡಿದುದು ಮರವೆ ಸಮ್ಯಜ್ಞಾನದೀಧಿತಿಗೆ
ಅರಸನನು ಬೆಸಗೊಂಬ ತನುಜನ
ಮರಣ ಹುಸಿಯೋ ದಿಟವೊ ಭೀಮನ
ಸೊರಹ ನಂಬೆನೆನುತ್ತ ರಾಯನನರಸುತೈತಂದ ೬೧

ಎಲೆ ಯುಧಿಷ್ಠಿರ ನನ್ನ ಸುತನೇ
ನಳಿದನೇ ಹುಸಿಯಲ್ಲಲೇ ನಿ
ರ್ಮಳವಚೋನಿಧಿ ನೀನು ಹೇಳೆನಲಸುರಹರ ನಗುತ
ಎಲೆಲೆ ನುಡಿಯಾ ಪಾಪಿ ಕದನದೊ
ಳಳಿದುದಶ್ವತ್ಥಾಮನೆಂಬ
ಗ್ಗಳೆಯ ಕರಿ ಮಾಳವರ ಥಟ್ಟಿನೊಳಂಜಬೇಡೆಂದ ೬೨

ಆದರಶ್ವತ್ಥಾಮ ಗಜವಿದಿ
ರಾದುದಳಿದುದು ದಿಟವೆನಲು ಬಿಸು
ಸುಯ್ದು ನರಸನ ನುಡಿಗೆ ನಂಬಿದನಕಟ ಮಗನೆನುತ
ಕೈದು ಕಯ್ಯಲಿ ಜಾರೆ ಝೊಂಪಿಸಿ
ಖೇದದಲಿ ಕಾತರಿಸಿ ಚಿತ್ತವಿ
ಭೇದದಲಿ ಕಳವಳಿಸಿ ಕರೆದನು ರೋಷತಾಮಸವ ೬೩

ಬಿಲುದುಡುಂಕಿ ಬಲುಸರಳ ತಿರುವಾಯ್
ಗೊಳಿಸಿ ಮಲೆತನು ಮಾರ್ಬಲಕೆ ಬಲೆ
ಕಳಚಿದರೆ ಮೃಗ ಬಿದ್ದುದಿರುಬಿನ ಕುಳಿಯೊಳೆಂಬಂತೆ
ತಿಳುಹಿ ಹೋದರು ಮುನಿಗಳೀತನ
ತಿಳಿವು ತೊಟ್ಟುದು ಮರವೆಯನು ಮುಂ
ಕೊಳಿಸಿ ಮೊಗೆದನು ಮತ್ತೆ ಪಾಂಡವಸೈನ್ಯಸಾಗರವ ೬೪

ತಿರುಗಿ ಭೀಮನನೆಚ್ಚನಿತ್ತಲು
ನರನ ಮಸೆಗಾಣಿಸಿದನರಸನ
ಹೊರೆಯ ಬಿರುದರ ಬಸಿಯಲೆಚ್ಚನು ವಾಮದಕ್ಷಿಣವ
ಮರಳಿ ಧೃಷ್ಟದ್ಯುಮ್ನ ಸಾತ್ಯಕಿ
ವರ ಯುಧಾಮನ್ಯೂತ್ತಮೌಂಜಸ
ರರಸುಮಕ್ಕಳ ಹಲಬರನು ಮುರಿಯೆಚ್ಚು ಬೊಬ್ಬಿರಿದ ೬೫

ಈಸು ಭರದಲಿ ಭೂತಹಿಂಸಾ
ದೋಷವನು ನೆರೆ ಮಾಡಿ ಮಕ್ಕಳ
ಗೋಸುಗವಲೇ ಹಣವ ಗಳಿಸುವುದಾತ ತಾನಳಿಯೆ
ಆಸೆಯಿದರೊಳಗೇಕೆ ಧುರದಾ
ವೇಶವಳಿಯದು ಶಿವ ಶಿವಾ ಸಂತ
ನಾಶವನು ಬಗೆಗೊಳ್ಳನೆಂದನು ಪವನಸುತ ನಗುತ ೬೬

ಕೇಳಿದನು ಕಡುನೊಂದನಡಿಗಡಿ
ಗಾಲಿ ನೀರೇರಿದವು ಕೈಯಲಿ
ಕೋಲು ಬಿಲು ಸಡಲಿದವು ಸಾಕೀ ದೇಹವೇಕೆನುತ
ಮೇಲು ದುಗುಡದ ಮೊಗದಲವನೀ
ಪಾಲ ಕರ್ಣ ಕೃಪಾದಿ ಭಟರಿಗೆ
ಹೇಳಿದನು ಮಗನಳಿದನಸ್ತ್ರ ತ್ಯಾಗ ತನಗೆಂದು ೬೭

ಎನುತ ರಥದೊಳು ರಚಿಸಿ ಪದ್ಮಾ
ಸನವನಿಂದ್ರಿಯ ಕರಣವೃತ್ತಿಯ
ನನಿತುವನು ತಡೆದೆತ್ತಿ ಮೂಲಾಧಾರ ಮಾರುತನ
ಇನ ಶಶಿಗಳೊಂದಾಗೆ ನಾಡಿಗ
ಳನಿಲನಿಕರವನುಗಿದು ಬಿಂದು
ಧ್ವನಿಕಳಾಪರಿಲುಳಿತನೆಸೆದನು ವರ ಸಮಾಧಿಯಲಿ ೬೮

ನಾಸಿಕಾಗ್ರದಲಿಟ್ಟ ಕಂಗಳ
ಸೂಸದುಸುರಿನ ಶಶಿಕಿರಣಪೀ
ಯೂಷಪಾನದ ರೋಮಪುಳಕದ ಗುಡಿಯ ಬೀಡುಗಳ
ಆ ಸುಷುಮ್ನಾ ನಾಡಿಯಲಿ ಕಾ
ಳಾಶಿಸಿದ ಪವನನ ಸಮಾಧಿ ವಿ
ಳಾಸನೆಸೆದನು ಸೌಖ್ಯ ಭಾವದ ಜಡಿವ ಝೊಮ್ಮಿನಲಿ ೬೯

ತನ್ನೊಳಿತರವನಿತರದೊಳು ನೆರೆ
ತನ್ನನೀಕ್ಷಿಸಿ ತಾನು ತನ್ನಿಂ
ದನ್ಯವೆರಡರೊಳೈಕ್ಯವೆಂಬುಪಚರಿತ ಭಾವವನು
ತನ್ನೊಳಗೆ ಹುಸಿಯೆಂದು ನಿತ್ಯನ
ನನ್ಯನಮಳಜ್ಞಾನರೂಪವೆ
ತನ್ನ ನಿಜವೆಂದರಿದು ತಾನಾಗಿರ್ದನಾ ದ್ರೋಣ ೭೦

ಒಡೆದು ನಡುನೆತ್ತಿಯನು ಝಳಪಿಸಿ
ಕಡುವೆಳಗು ಥಳಥಳಿಸಿ ತರಣಿಯ
ತುಡುಕಿ ಹಾಯ್ದುದು ರಶ್ಮಿ ರಂಜಿಸಿತಖಿಳ ದಿಗುತಟವ
ಕುಡಿವೆಳಗನಸುರಾರಿ ಮುನಿಗಳ
ಗಡಣವರ್ಜುನ ಕೃಪರು ಕಂಡರು
ಪಡೆಯೊಳಗೆ ತಾನುಳಿಯೆ ಕಂಡವರಿಲ್ಲ ಕೇಳೆಂದ ೭೧

ತೀರಿತೇ ಮಗನುಬ್ಬಟೆಯು ಜ
ಜ್ಜಾರತನವಾಚಾರ್ಯನಳಿದನ
ದಾರು ನಮಗಾಪ್ತಿಗರು ದೊರೆಯಿನ್ನಾರು ಸಂಗರಕೆ
ಆರು ನಿಮಗಿದ್ದೇಗುವರು ರಣ
ವೀರರಗ್ಗದ ದೈವವೇ ಮನ
ವಾರೆ ಮೆಚ್ಚಿಹುದವರನಿನ್ನೇನರಸ ಕೇಳೆಂದ ೭೨

ಹತ್ತೊಂಬತ್ತನೆಯ ಸಂಧಿ

ಸೂ. ರಾಯಕಟಕವ ಬೆದರಿಸಿದ ನಾ
ರಾಯಣಾಸ್ತ್ರದ ಬಾಧೆಯನು ಕಮ
ಲಾಯತಾಂಬಕ ನಿಲಿಸಿ ಸಂತೈಸಿದನು ಪಾಂಡವರ

ಕೇಳು ಧೃತರಾಷ್ಟ್ರಾವನಿಪ ಗುರು
ಬೀಳುಕೊಟ್ಟನು ದೇಹವನು ನ
ಮ್ಮಾಳ ವಿಧಿಯೇನಪಜಯದ ತವನಿಧಿಯಲೇ ನಮಗೆ
ಮೇಲೆ ಬಂದುದು ಕಷ್ಟವರಿ ಭೂ
ಪಾಲರಿಗೆ ಕೇಳಿದನು ಖಳ ಪಾಂ
ಚಾಲಸುತನೈತಂದನಲ್ಲಿಗೆ ಜಡಿವಡಾಯುಧದಿ ೧

ಐದಿ ಮುಂದಲೆವಿಡಿದು ಬಾಗಿಸಿ
ಕೊಯ್ದನಾತನ ಕೊರಳನೆಡದಲಿ
ಹೊಯ್ದು ಮುರಿದನು ಬರಿಯಲಪ್ಪಳಿಸಿದನು ಬೆನ್ನೆಲುವ
ಕೈದಣಿಯೆ ಕಡಿಖಂಡಮಯವೆನೆ
ಹೊಯ್ದು ರಥದಲಿ ಕೆದರಿ ಜಡಿದನ
ಡಾಯ್ದವನು ಕಡುಗೋಪದಲಿ ನೋಡಿದನು ರಿಪುಶಿರವ ೨

ಎಲೆಲೆ ಪಾತಕಿ ಹೆಣನ ಹೊಯ್ದರೆ
ಬಲುಗಡಿಯ ನೀನೆಂಬರೇ ಸುಡು
ಹೊಲೆಯರಿದಕಂಗೈಸುವರೆ ತಾ ರಾಜಸೂನು ಗಡ
ಅಳಿದನಾದರೆ ನಿನ್ನ ಭಾಗ್ಯವು
ಉಳಿದಡೀತನ ಮಗನು ನಿನ್ನಯ
ಕುಲದ ತಲೆ ಚೆಂಡಾಡಿದಲ್ಲದೆ ಬರಿದೆ ಬಿಡನೆಂದ ೩

ಎಂದ ಸೂತನ ಬಾಯ ಹೊರಕ
ಯ್ಯಿಂದ ಹೊಯ್ದನು ಹಡಪದವರನು
ಹಿಂದಣಾಪ್ತರನಖಿಳ ಚಮರಚ್ಛತ್ರಧಾರಿಗಳ
ಮುಂದುವರಿದೊಡೆ ತಿವಿದು ಮುರಿದನು
ಮಂದಮತಿ ಬಳಿಕವನ ಸುಡುಸುಡ
ಲೆಂದು ಧೃಷ್ಟದ್ಯುಮ್ನನನು ನೆರೆ ಬೈದುದಖಿಳಜನ ೪

ಕಡಿಕುಗಳನಾಯ್ದರಸಿ ರಥದೊಳು
ಗುಡಿಸಿ ಸಿಂಧವನೆತ್ತಿ ಸಾರಥಿ
ತುಡುಕಿ ವಾಘೆಯ ಮುರುಹಿ ಮರಳಿಚಿ ರಥದ ಕುದುರೆಗಳ
ತಡೆಯದಶ್ವತ್ಥಾಮನಲ್ಲಿಗೆ
ನಡೆದು ಬರುತಿರೆ ಕಂಡು ಮನದಲಿ
ಕಡು ನಿರೋಧವ ಹಿಡಿದು ಚಿಂತಿಸುತಿರ್ದನಾ ದ್ರೌಣಿ ೫

ಏನಿದಚ್ಚರಿ ಕೌರವೇಂದ್ರನ
ಸೇನೆ ತಲೆಕೆಳಗಾಗುತಿದೆ ರಿಪು
ಸೇನೆ ಬೊಬ್ಬಿರಿದಾರುತಿದೆ ಮಡಿದಾತನಾವವನೊ
ಸೇನೆಗೊಡೆಯನು ಬೊಪ್ಪನಿದು ತಾ
ನೇನು ರಥವೇ ಬರಿದೆ ಬರುತಿದೆ
ಹಾನಿ ಜನಕಂಗಾಯ್ತೊ ಶಿವ ಶಿವ ಎಂದನಾ ದ್ರೌಣಿ ೬

ತಂದು ಸಾರಥಿ ರಥವನೀತನ
ಮುಂದೆ ನಿಲಿಸಿದ ಬಿದ್ದನಂಘ್ರಿಯೊ
ಳಂದು ಗೋಳಿಟ್ಟೊರಲಿದುದು ಕಳಶಜನ ಪರಿವಾರ
ತಂದೆಯೈದನೆ ಚಾಪವೇದ ಮು
ಕುಂದನೈದನೆ ನಿನ್ನ ಕಾಣಲು
ಬಂದನಯ್ಯನನಪ್ಪಿಕೊಳು ಮಾತಾಡಿ ನೋಡೆಂದ ೭

ಕೊಡೆ ಹರಿಹಂಚಾದ ತಂದೆಯ
ಗೂಡ ನೋಡದ ಮುನ್ನ ಕಂಬನಿ
ಮೂಡಿ ಮುಳುಗಿದವಾಲಿ ಕಾಣವು ಪಿತೃಕಳೇವರವ
ನೋಡಲೆಳಸದ ಮುನ್ನ ಕಿಡಿಗಳ
ರಘಾಡಿಯನು ಕಣ್ಣುಗುಳಿದವು ಮಿಂಗೆ
ನೋಡಿದಶ್ವತ್ಥಾಮ ಕಾಣನು ಮುಂದೆ ಪರಬಲವ ೮

ಅದ್ದನಳಲಿನ ಜಲಧಿಯೊಳು ಮುರಿ
ದೆದ್ದು ಕೋಪಾನಳನ ರಭಸದಲಿ
ಬಿದ್ದು ನನೆದನು ನೀರಿನಲಿ ಕಾಹೇರಿ ಕಿಚ್ಚಿನಲಿ
ಗೆದ್ದುದುಂದಕವನನಲನನಲನ
ನದ್ದಿತುದಕವದೊಂದನೊಂದನು
ಕದ್ದುವೆರಡರ ಹೋರಟೆಗೆ ಗುರುಸೂನು ಬೆಂಡಾದ ೯

ಕೆದರಿ ಹೊರಳುವ ಸಾರಥಿಯುನೆ
ತ್ತಿದನು ರಣವೃತ್ತಾಂತವನು ಕೇ
ಳಿದನು ಶಮೆ ಸ್ಥೈರಣೆವಿವೇಕವ ನೂಕಿದನು ಸೆರೆಗೆ
ಒದೆದನಳಲನು ರೋಮ ಹರುಷವ
ಹೊದೆದು ಹೊರೆ ಹೆಚ್ಚಿದನು ಕಾಹೇ
ರಿದನು ಕಲಿ ಮನವಳುಕಿ ತಗ್ಗಿತು ರೋಷಭಾವದಲಿ ೧೦

ಚಟುಳಕೋಪಾಗ್ನಿಯಲಿ ನಾಸಾ
ಪುಟದ ಸುಯ್ಲಲಿ ವಿಸ್ಫುಲಿಂಗೋ
ತ್ಕಟಸಮಾಧಿಗಳಿದ್ದಲಲಿ ನಿಗ್ರಹಕಟಾಹದಲಿ
ಪಟುತರದ ಬಾಹುಪ್ರತಾಪದ
ಪುಟವನೆತ್ತದೆ ಮಾಣನೆನಲು
ತ್ಕಟಿಸುತಿರ್ದುದು ರೌದ್ರವೀರಾಭ್ಯುದಯ ಸನ್ನಾಹ ೧೧

ನೊಂದ ಜವನೋ ಜಗವನುರುಹಲು
ಬಂದ ಶಿವನೋ ಕಂಬದಿಂದೊಗೆ
ತಂದ ರೌದ್ರಾಟೋಪ ಮಾನವರೂಪ ಕೇಸರಿಯೊ
ತಂದೆಯುಳಲಿಗನಿರವು ವಿಶ್ವವ
ನೊಂದು ನಿಮಿಷಕೆ ಸುಡುವುದೋ ಹಾ
ಯೆಂದುದಮರಾನೀಕವೆಲೆ ಭೂಪಾಲ ಕೇಳೆದ ೧೨

ಮುರುಹಿದನು ಮೀಸೆಯನು ಕಣ್ಣುಗ
ಳರಳಿದವು ಹೊಗೆ ಸುತ್ತಿ ಸುಯ್ಲಲಿ
ಸುರಿದುದುರಿ ಹುಬ್ಬುಗಳನುರೆ ಬಿಗಿದೌಡನೊಡೆಯೊತ್ತಿ
ಬೆರಳ ತುದಿಯಲಿ ಬೊಬ್ಬಿರಿದು ಹರಿ
ಶರಕೆ ಕೈನೀಡಿದನು ಕಲ್ಪದ
ಹರನವೊಲು ಹರರೂಪ ಹೊಂಗಿದನಧಿಕ ರೋಷದಲಿ ೧೩

ದನುಜಹರ ಮಂತ್ರವನು ಮನದಲಿ
ನೆನೆದು ಕೈನೀಡಿದನು ತುದಿಯಂ
ಬಿನಲಿ ತುರುಗಿದ ಕಿಡಿಯ ಬಿರುಕೇಸರಿಯ ಧಾಳಿಗಳ
ತನಿವೊಗರ ಬಲುವೊಗೆಯ ಹೊರಳಿಯ
ಕನಕರಸ ರೇಖಾವಳಿಯ ಮೈ
ಮಿನುಗುಗಳ ಹೊಂಗರಿಯ ನಾರಾಯಣ ಮಹಾಶರಕೆ ೧೪

ಪ್ರಳಯ ಮೇಘವನೊಡೆವ ರವಿಮಂ
ಡಲ ಸಹಸ್ರದ ರಶ್ಮಿಯೋ ಜಗ
ದಳವಿನಲಿ ಝೊಂಪಿಸುವ ಹರನುರಿಗಣ್ಣ ದೀಧಿತಿಯೊ
ಮುಳಿದ ನರಕೇಸರಿಯ ದಾಡೆಯ
ಥಳಥಳತ್ಕಾರವೊ ಮಹಾಸ್ತ್ರದ
ಬೆಳಗೊ ಹೆಸರಿಡಲಾರು ಬಲ್ಲರು ಭೂಪ ಕೇಳೆಂದ ೧೫

ಸರಳ ಚೂಳಿಯ ಝಳದೊಳಗೆ ಸಾ
ವಿರ ನಿದಾಘದ ಸೂರ್ಯರುಬ್ಬಟೆ
ಕರಗಿ ಹೋಯಿತು ಬಾಯಿಧಾರೆಯ ಕಿಡಿಯ ಧಾಳಿಯಲಿ
ಬರಸಿಡಿಲ ಶತಕೋಟಿ ಸೀದವು
ನಿರಿವೊಗರ ಕಬ್ಬೊಗೆಯ ಕಿಡಿಯಲಿ
ನೆರೆದವಂತ್ಯದ ಮೇಘವೆನೆ ಝಗರಝಗಿಸಿತಮಳಾಸ್ತ್ರ ೧೬

ಒಳಗೆ ಜಲಚರವೊದರೆ ಕಂದಿದುದು
ಜಲಧಿ ಕಾದುದು ಧರಣಿ ಸೀದುದು
ಕುಲಗಿರಿಗಳುರೆ ಸಿಡಿದು ಸೀಕರಿವೋಯ್ತು ವನನಿಕರ
ನೆಲಕೆ ದಾಡೆಯ ಕೊಟ್ಟು ಕುಂಭ
ಸ್ಥಳವ ತೆಗೆದವು ದಿಗಿಭತತಿ ಹೆಡೆ
ನೆಳಿಯೆ ಮಣಿಗಳಲಾಂತನವನಿಯನುರಗಪತಿಯಂದು ೧೭

ಗುಳವ ಕೊಯ್ದಿಳುಹಿದರು ಕರಿ ಸಂ
ಕುಳದಲಾರೋಹಕರು ಜೋಡನು
ಕಳಚಿ ಬಿಸುಟರು ರಾವುತರು ಹಕ್ಕರಿಕೆಗಳು ಸಹಿತ
ಝಳದ ಝಾಡಿಗೆ ಬೆವರಿ ವಸನಾಂ
ಚಲವ ಗಾಳಿಗೆ ಮೊಗವನೆತ್ತಿದ
ರಳುಕಿ ಕಣ್ ಕೋರೈಸಿ ಮಮ್ಮಲ ಮರುಗಿತುಭಯಬಲ ೧೮

ಮೇಲ ಜಗವೇಳೊಡಿದವು ಧ್ರುವ
ನಾಲಯಕೆ ನೆಲೆದಪ್ಪಿದ್ದುದು ಗ್ರಹ
ಮಾಲೆ ತಾರಾರಾಸಿ ಜೋಯಿಸರೋದು ಹುಸಿಯಾಯ್ತು
ಧಾಳಿಡುವ ಸೆಗಳಿಯಲಿ ತಳ ಪಾ
ತಾಳಕದ್ದುದು ಕಮಲಜಾಂಡದ
ಮೇಲಣಾವರಣಾಂಬು ಕುದಿದುದು ಹೇಳಲೇನೇದ ೧೯

ಒಡೆಯರಿಲ್ಲಾ ಜಗಕೆ ಲೋಗರ
ಸುಡುವರೊಪ್ಪಿಸಿ ಕೊಡುವರೇ ನಾ
ನೊಡೆಯ ಫಡ ತಾನೊಡೆಯರೆಂಬರು ಮೂವರೀ ಜಗಕೆ
ನುಡಿಯರೀ ಹೊತ್ತಿನಲಿ ನಮಗಿ
ನ್ನೊಡೆಯರಾರಿನ್ನಾರ ಬಸುರೊಳ
ಗಡಗುವೆವು ಶಿವ ಶಿವ ಎನುತ ತಲ್ಲಣಿಸಿತಮರಗಣ ೨೦

ಕವಿದ ಕೌರವ ಬಲದ ಸುಮ್ಮಾ
ನವನು ತಮ್ಮಂಜಿಕೆಯನಾ ಭೈ
ರವನ ಭಾರಿಯಸರಳ ಸೊಗಡಿಗೆ ಬೇವ ಮೂಜಗವ
ಅವರು ಕಂಡರು ಖಾತಿಯಲಿ ಪಾಂ
ಡವರು ಧೃಷ್ಟದ್ಯುಮ್ನನನು ತವ
ತವಗೆ ಬೈದರು ಪಾಪಿ ಲೋಕವ ಕೊಂದೆ ನೀನೆನುತ ೨೧

ಅಕಟ ಗುರುಹತ್ಯಾ ಮಹಾ ಪಾ
ತಕವನೇ ನೆರೆ ಮಾಡಿತಲ್ಲದೆ
ಸಕಲ ಲೋಕದ ಬೇರುಗೊಲೆಗೆಲೆ ಪಾಪಿ ನೀನಾದೈ
ವಿಕಟ ವಿಕ್ರಮ ವಿಸ್ಫುಲಿಂಗ
ಪ್ರಕರದಲಿ ಧಗಧಗಿಸುತಿದೆ ಸಾ
ಯಕವ ನಿಲಿಸಾ ನೀನೆನುತ ಭಂಗಿಸಿತು ಪರಿವಾರ ೨೨

ಅವನ ಗುರುತನವೇನು ವಿಪ್ರಾ
ಧಮನಲಾ ಶಸ್ತ್ರೋಪಜೀವನ
ನಿವನು ಋಷಿಯೋ ದ್ರೋಣವಧೆಯನ್ಯಾಯವೇ ತನಗೆ
ಇವನು ತಮ್ಮಯ್ಯನನು ನೆರೆ ಪರಿ
ಭವಿಸನೇ ಚಿಕ್ಕಂದು ನಿಮಗೇ
ಕಿವನನಿರಿದರೆ ಖಾತಿಯೆಂದನು ದ್ರುಪದಸುತ ಮುಳಿದು ೨೩

ಅವಗಡಿಸಲೇಕಗ್ರ ಜನ್ಮ
ಬ್ರುವನೆ ಕಟಕಾಚಾರ್ಯನೆಲೆ ನೀ
ನವರಿವರನೆಂಬಂತೆ ನುಡಿವರೆ ಗುರುವಲಾ ನಿನಗೆ
ಇವರಿಗೀ ನುಡಿಯುರಿಸಿತೇನಿದು
ಶಿವ ಶಿವಾ ಗುರುನಿಂದೆಯನು ಕೇ
ಳುವರು ನಾವಲ್ಲೆನುತ ಸಾತ್ಯಕಿ ಮುಚ್ಚಿದನು ಕಿವಿಯ ೨೪

ಗುರುವಿಘಾತಕರಾವು ತಾನತಿ
ಗುರುಪದೋಪಾಸಕನು ತನ್ನನು
ಕರೆದರಾರಿಕೆಂದು ಧೃಷ್ಟದ್ಯುಮ್ನನುರಿದೇಳೆ
ದುರುಳತನವಾರೊಡನೆಯೋ ಬಾ
ಹಿರ ಮಹಾಪಾತಕಿಯನೊದದಿ
ಟ್ಟೊರಸುವೆನು ತಾನೆನುತ ಸಾತ್ಯಕಿ ಖಂಡೆಯವನುಗಿದ ೨೫

ಎಲೆಲೆ ಹಿಡಿಹಿಡಿ ಸಾತ್ಯಕಿಯನೊಳ
ಗೊಳಗೆ ತೋಟಿಯೆ ಜಾಗು ಕೌರವ
ಬಲದವರ ಬೂತಾಟವಾಯಿತೆ ನಮ್ಮ ಥಟ್ಟಿನಲ್ಲಿ
ನಿಲಿಸೆನುತ ನೃಪನೊರಲೆ ಕವಿದೆಡೆ
ಗಲಿಸಿ ಹಿಡಿದನು ಭೀಮನೀತನ
ಬಲುಭುಜವನೌಚಿದನು ಕೊಂಡನು ಕಯ್ಯ ಖಂಡೆಯವ ೨೬

ಸೆಳೆದನೊರೆಯುಲಡಾಯುಧವನ
ವ್ವಳಿಸಿದನು ಪಾಂಚಾಲಸುತನೀ
ಗಳಹನನು ಬಿಡು ಭೀಮ ಕೊಡು ಸಾತ್ಯಕಿಯು ಖಂಡೆಯುವ
ಎಲವೊ ಸಾತ್ಯಕಿ ಕೃಷ್ಣದೇವರಿ
ಗಳುಕಿ ಸೈರಿಸಿದರೆ ದೊಠಾರಿಸಿ
ಗೆಲನುಡಿವೆ ಹೆಡತಲೆಯುಲುಗಿವೆನು ನಿನ್ನ ನಾಲಗೆಯ ೨೭

ತನ್ನೊಳಿದ್ದವಗುಣವ ನೋಡದೆ
ಚುನ್ನವಾಡುವನಿದಿರನೆಲವೋ
ನಿನ್ನ ಹೋಲುವರಾರು ಬಾಹಿರ ಭಂಡರವನಿಯುಲಿ
ನಿನ್ನೆ ಶಸ್ತ್ರವ ಬಿಸುಟ ಯೋಗ ವಿ
ಪನ್ನನನು ನೀನೇನ ಮಾಡಿದೆ
ನಿನ್ನ ಶೋಧಿಸಿ ಬಳಿಕ ಪರರನು ಹಳಿವುದೇನೆಂದ ೨೮

ಮಿಡುಕಿದನು ಸಾತ್ಯಕಿ ವೃಕೋದರ
ನೊಡೆಯುವಚಿದನು ಮತ್ತೆ ಪವನಜ
ಬಿಡು ನಿನಗೆ ನೃಪನಾಣೆ ಕುಡಿವೆನು ಖಳನ ಶೋಣಿತವ
ಬಿಡು ಬಿಡಕಟಾ ಭೀಮ ಸಾತ್ಯಕಿ
ಹಿಡಿಹಿಡಿಯು ಹಮ್ಮೈಸುವನು ಬಿಡು
ತೊಡಕಿ ನೋಡಲಿಯೆನುತ ಧೃಷ್ಟದ್ಯುಮ್ನನಳ್ಳಿರಿದ ೨೯

ಮುಳಿದು ಯಾದವ ಸೇನೆ ಕೈದುವ
ಸೆಳೆದುದಾ ಪಾಂಚಾಲನಾಯುಕ
ರುಲಿದು ನಿಂದುದು ಕಂಡನಸುರಧ್ವಂಸಿ ನಸುನಗುತ
ಎಲೆಲೆ ಪಾಪಿಗಳಿರ ವೃಥಾ ತ
ಮ್ಮೊಳಗೆ ತೋಟಿ ಶರಾಗ್ನಿಯಿತ್ತಲು
ಮೊಳಗುತದೆ ಕೆಡೆಬೀಳಹೊಯ್ ಹೊಯ್ ಕುನ್ನಿಗಳನೆಂದ ೩೦

ಬೇರೆ ತಮಗೊಂದಾಳುತನವುರಿ
ಸೂರೆಗೊಳುತಿದೆ ಜಗವನಿತ್ತಲು
ಕೌರಿಡುವ ಕಾಲಾಗ್ನಿಯಿದೆ ಕಬ್ಬೊಗೆಯು ಕವಚದಲಿ
ತೋರಲಾಪರೆ ಬಾಹು ಸತ್ವವ
ತೋರಿರೈ ದಿಟ ಪಂಥದೋಲೆಯು
ಕಾರರಹಿರೆನುತಸುರರಿಪು ಗಜಬಜವ ನಿಲಿಸಿದನು ೩೧

ಇತ್ತ ಲೋಕದ ಕಂಗಳಿವೆಗಳು
ಕೆತ್ತವಳ್ಳಿರಿವುರಿಯು ಜಾಳಿಗೆ
ತೆತ್ತಿಸಿತು ಹರಿದಶ್ವ ಶತವನು ಶಿವ ಮಹಾದೇವ
ಕಿತ್ತು ಶರವನು ತೂಗಿ ಬಿಲ್ಲಿಗೆ
ತೆತ್ತಿಸಿದನುರೆ ಸೇದಿ ತೋರಿಹ
ತಂತ್ತು ನಿನಗರಿಸೇನೆ ಹೋಗೆನುತೆಚ್ಚು ಬೊಬ್ಬಿರಿದ ೩೨

ಜಗದ ಹುಯ್ಯಲು ಜಡಿಯುಲಭ್ರದ
ಲಗಿದು ಕೌರವಸೇನೆ ಹರುಷದ
ಸೊಗಸಿನಲಿ ಮೈಮರೆಯೆ ಕೃಷ್ಣಾದಿಗಳು ಕೈಮರೆಯೆ
ಹೊಗೆಯು ಹೊರಳಿಯು ಕಿಡಿಯು ಥಟ್ಟಿನ
ತಗೆದುರಿಯು ತೆಕ್ಕೆಯುಲಿ ಧಗಧಗ
ಧಗಿಸಿ ಥಾಳಿಟ್ಟುದು ಮಹಾಶರವಹಿತ ಮೋಹರಕೆ ೩೩

ಹಾ ಮುರಾಂತಕ ಹಾ ಯುಧಿಷ್ಠಿರ
ಹಾ ಮರುತ್ಸುತ ಹಾ ಧನಂಜಯು
ಹಾ ಮಗನೆ ಹಾ ತಂದೆ ಹಾ ಒಡವುಟ್ಟಿದನೆಯೆನುತ
ಭೂಮಿ ತೆರೆಯುಳೆ ಬಾಯುನಕಟಕ
ಟಾ ಮಹೋದಧಿ ದೂರವಿನ್ನೇ
ನೀ ಮಹಾಸ್ತ್ರಕೆ ಸಿಕ್ಕಿದೆವೆಯೆಂದೊರಲಿತರಿಸೇನೆ ೩೪

ಕಳವಳಿಸಿತರಿಸೇನೆ ಚೂಣಿಯು
ಕೊಳುಗಿಡಿಯು ಸೆಖೆ ತಾಗಿ ಸುಭಟಾ
ವಳಿಯು ಮೀಸೆಗಳುರಿಯೆ ನೆರೆ ಕಂದಿದವು ಮೋರೆಗಳು
ಬಲದ ಸುತ್ತಲು ಕಟ್ಟಿತುರಿ ಕೆಂ
ಬೆಳಗು ಕುಡಿದವು ಕರ್ಬೊಗೆಗಳ
ಗ್ಗಳದ ಬಾಣದ ಬಂದಿಯುಲಿ ಸಿಲುಕಿತ್ತು ರಿಪುಸೇನೆ ೩೫

ಝಳಕೆ ಘೀಳಿಟ್ಟೊರಲಿದವು ಕರಿ
ಕುಳ ತುರಂಗದ ಥಟ್ಟು ಖುರದಲಿ
ನೆಲನ ಹೊಯ್ದು ವ್ವಳಿಸಿದವು ರಾವುತರನೀಡಾಡಿ
ಬಲು ರಥವನಸಬಡಿದು ಸೂತನ
ನಿಳುಹಿ ಹಯುವೋಡಿದವು ಮು
ಮ್ಮುಳಿಸಿ ತನಿಗುದಿಗುದಿದು ಕೋಟಲೆಗೊಂಡುದರಿಸೇನೆ ೩೬

ವಾಯುಕಂಜದಿರಂಜದಿರಿ ಛಡ
ಬಾಯು ಬಿಟ್ಟರೆ ಹೋಹಂದೇ ನಿ
ಮ್ಮಾಯುಪಕೆ ಹೊಣೆ ತಾನು ಹೇಳಿತ ಮಾಡಿ ಬೇಗದಲಿ
ಆಯುಧಂಗಳ ಬಿಸುಟು ಕರಿ ರಥ
ಜಾಯಿಲಂಗಳನಿಳಿದು ಬದುಕುವು
ಪಾಯುವೆಂದಸುರಾರಿ ಸಾರಿದನಂದು ಕೈ ನೆಗಹಿ ೩೭

ಕಳಿದ ಹೂವಿನ ತೊಡಬೆಯೋ ಕುಸಿ
ದಲೆಯು ಬಿಟ್ಟಿಯು ಭಾರವೊ ನಿ
ರ್ಮಳನ ಚಿತ್ತದ ಖತಿಯೊ ದಾನವ್ಯಸನಿಯೊಡವೆಗಳೊ
ನಳಿನನಾಭನ ಮಾತು ಹಿಂಚಿತು
ಕಳಚಿದವು ಕೈದುಗಳು ಕೈಗಳ
ಲುಳಿವುಪಾಯುದ ಜೋಡ ತೊಟ್ಟುದು ಪಾಂಡುಸುತಸೇನೆ ೩೮

ಬೀತ ಕೈದುಗಳಖಿಳದಳ ಸಂ
ಘಾತವನು ಬಾಣಾಗ್ನಿ ಬೆರಸಿತು
ಪೂತು ಭಂಡರಿರೆನುತ ಬಿಟ್ಟುದು ಬಾಣವರಿಭಟರ
ಆತನಾವೆಡೆ ಧರ್ಮಜನು ವಿ
ಖ್ಯಾತನರ್ಜುನನನಿಲಸುತ ಮಾ
ದ್ರೀತನುಜರೆಂದೆನುತ ಹೊಕ್ಕುದು ರಾಜ ಮೋಹರವ ೩೯

ಹರಿಯು ಬಯ್ಗುಳು ಬೆದರಿಸಲು ನೃಪ
ನಿರೆ ನಿರಾಯುಧನಾಗಿ ಮಾದ್ರೇ
ಯರು ಶಿಖಂಡಿ ಯುಯುತ್ಸು ಸಾತ್ಯಕಿ ಸೃಂಜಯಾದಿಗಳು
ಕರದ ಕದಪಿನ ತಳಿತ ಮುಸುಕಿನ
ಮುರಿದ ಮೋರೆಯು ಮುಂದೆ ಹರಹಿದ
ತರತರದ ಕೈದುಗಳ ಸುಭಟರ ಕಂಡುದವುಳಾಸ್ತ್ರ ೪೦

ಏಕೆ ನಾಚಿಕೆ ಧರ್ಮಹಾನಿ
ವ್ಯಾಕುಳತೆಯಿನ್ನೇಕೆ ವೈದಿಕ
ಲೌಕಿಕವದೇಗುವುವು ಜೀವವ್ರಯಕೆ ಕುಲವುಂಟೆ
ಏಕೆ ಭಯ ನಮಗಿನ್ನು ಕೈದುವ
ನೂಕಿದವರನು ಹೆಂಗುಸನು ತಾ
ಸೋಕಿದರೆ ಮುರಹರನ ಪದದಾಣೆಂದುದಮಳಾಸ್ತ್ರ ೪೧

ಇವರೊಳುಂಟೇ ಕೈದುವೊತ್ತುವ
ರವರನರಸುವೆನೆನುತ ಬರಲಾ
ಪವನಸುತನನು ಧಟ್ಟಿಸಿದನಾ ದನುಜರಿಪು ಮುಳಿದು
ಅವನಿಗಿಳಿದೀಡಾಡಿ ಕಳೆ ಕೈ
ದುವನು ತಾ ಮೊದಲಾಗಿ ನಿಂದು
ದವನು ನೋಡೆನಲನಿಲಸುತ ನಸುನಗುತಲಿಂತೆಂದ ೪೨

ದೇಹ ಕೀರ್ತಿಗಳೊಳಗೆ ನಿಲುವುದು
ದೇಹವೊ ಕೀರ್ತಿಯೊ ಮುರಾಂತಕ
ಬೇಹುದನು ಬೆಸಸಿದಡೆ ಮಾಡೆನು ಬಲ್ಲಿರೆನ್ನನುವ
ಗಾಹುಗತಕದಲುಳಿವ ಧರ್ಮ
ದ್ರೋಹಿ ತಾನಲ್ಲಿನ್ನು ನೋಡಾ
ಸಾಹಸವನೆನುತಿತ್ತ ಮುರಿದನು ಸರಳ ಸಮ್ಮುಖಕೆ ೪೩

ಪೂತು ಪಾಯಿಕು ಭೀಮ ನೆರೆದೀ
ಬೂತು ಬಲದಲಿ ವೀರ ನೀನಹೆ
ಯೇತಕಿವದಿರು ಗಂಡು ಜೋಹದ ಗರುವ ಸೂಳೆಯರು
ಸೋತಡೆಯು ಜಯ ನಿನ್ನದೆನುತ ವಿ
ಧೂತಧೂಮದಿ ಕಿಡಿಯ ಝಾಡಿಗ
ಳೀತನನು ಮುಸುಕಿದವು ಚುಂಬಿಸಿತಂಬು ಪವನಜನ ೪೪

ಗಿರಿಯ ಮುತ್ತಿದ ಮುಗಿಲವೊಲು ಹೊಗೆ
ಹೊರಳಿಗಟ್ಟಿತು ಮೇಲೆ ದಳ್ಳುರಿ
ಧರಧುರದಲೊಳಬೀಳುತಿದ್ದವು ಕಿಡಿಯ ಚೂಣಿಯಲಿ
ಉರಿಯೊಳದ್ದಿತೆ ತಮ್ಮ ಹಾಯೆಂ
ದರಸ ಮೊದಲಾದಖಿಳಭೂಪರು
ಕರದ ಬಿರುವೊಯ್ಲುಗಳ ಬಾಯವರೊರಲಿ ಹೊರಳಿದರು ೪೫

ವಾಯುಸುತ ಹಾಯೆನುತ ಫಲುಗುಣ
ಬಾಯಿ ಬಿಡೆ ಹರಿ ಜರೆದನಳುವನ
ಬಾಯ ನೋಡಾ ಬೇಗ ತೊಡು ತೊಡು ವರುಣ ಮಾರ್ಗಣವ
ಸಾಯಲರಿಯನು ಭೀಮನೆನೆ ನಾ
ರಾಯಣನ ನುಡಿಯಿಂದ ಮುನ್ನ ಜ
ಲಾಯತಾಸ್ತ್ರವನರ್ಜುನನು ಗಾಂಡಿವದಲುಗುಳಿಸಿದ ೪೬

ಹೊಗೆಯನೊದೆದೊಳಬಿದ್ದು ಕಿಡಿಗಳ
ನುಗಿದು ದಳ್ಳುರಿದುರುಗಲನು ತನಿ
ಬಿಗಿದು ಭೀಮನ ರಥದ ಸುತ್ತಲು ಸೂಸಿ ತೆರೆ ಮಸಗೆ
ಹಗೆಯನೆನಗಿದಿರೊಡ್ಡಿ ಜುಣುಗಲು
ಬಗೆದರೇ ಖಂಡೆಯದ ಮೊನೆಯಲಿ
ಮುಗುಳಿಚುವರೇ ತನ್ನನೆನುತುರವಣಿಸಿತಮಳಾಸ್ತ್ರ ೪೭

ಉರುಬಿದವು ಕೇಸುರಿಗಳುದಕವ
ಸುರಿದುವೊಣಗಿಲುಗಿಡಿಯ ಹಬ್ಬುಗೆ
ಹೊರಗೆ ಮಸಗಿತು ಮುಸುಕಿತುದಕದ ಬಾಣವಕ್ಕುಡಿಸೆ
ಒರತೆಯಾರಿತು ವರುಣಶರ ಬಾ
ಯರತು ನೀರಡಿಸಿದುದು ಭೀಮನ
ಸೆರಗ ಹಿಡಿದಳು ಮೃತ್ಯುವವನೀಪಾಲ ಕೇಳೆಂದ ೪೮

ಆವ ಶರವಿದ್ದೇಗುವುದು ಮೈ
ಗಾವನಸುರಾಂತಕನಲ್ಲೆ ತಾ
ನಾವ ವಹಿಲದೊಳುರಿಯೊಳಿಡೆಹಾಯ್ದನಿಲಜನ ತೆಗೆದ
ನಾವರಿಯೆವಾ ಪವನಜನ ಶ
ಸ್ತ್ರಾವಳಿಯನಾ ಫಲುಗುಣನ ಗಾಂ
ಡೀವವನು ಹರಿ ಸೆಳೆದುಕೊಂಡನು ಬಿಸುಟನವನಿಯಲಿ ೪೯

ಮುರಿಮುರಿದು ಕಬ್ಬೊಗೆಯ ಹೊದರಿನ
ಹೊರಳಿ ಹರೆದುದು ಸೂಸುಗಿಡಿಗಳ
ನೆರವಿ ನಸಿದುದು ನಿಮಿರ್ದ ಹೊಂಗರಿಯಂಬು ಹೊಳೆಹೊಳೆದು
ಮುರಹರನ ಪಾದಾರವಿಂದದ
ಹೊರೆಯೊಳಡಗಿತು ಹೋಯ್ತು ಭಯವು
ಬ್ಬರದೊಳಗೆ ಬೊಬ್ಬಿರಿದವುರು ನಿಸ್ಸಾಳಕೋಟಿಗಳು ೫೦

ಜಗದುಸುರು ಪಸರಿಸಿತು ಹರುಷದ
ಹೊಗರು ಮಸಗಿತು ರಿಪುನೃಪರ ನಿ
ನ್ನಗಡು ಮಗನುತ್ಸಾಹವದ್ದುದು ಖೇದಪಂಕದಲಿ
ಹೊಗೆವ ಮೋರೆಯ ಕಯ್ಯಗಲ್ಲದ
ಬಿಗಿದ ಬೆರಗಿನ ಖತಿಯೊಳುಸುರುವ
ನಗೆಯೊಳಶ್ವತ್ಥಾಮನಿದ್ದನು ಮೊಗದ ಮೋನದಲಿ ೫೧

ಏನು ಮಾಡುವೆನಿನ್ನು ಭಾಗ್ಯವಿ
ಹೀನನಕಟಾ ಕೌರವನು ಸುರ
ಧೇನು ನೆರೆ ಗೊಡ್ಡಾಯ್ತು ಸುರತರು ಕಾಡಮರನಾಯ್ತು
ಹಾನಿಯಿವದಿರಿಗೊಲಿದುದಾರಿ
ದ್ದೇನಹುದು ಪರದೈವದನುಸಂ
ಧಾನವತ್ತಲು ಸುಡಲೆನುತ ತಿರುಗಿದನು ಪಾಳೆಯಕೆ ೫೨

ಬಂದು ವೇದವ್ಯಾಸಮುನಿ ಗುರು
ನಂದನಂಗರುಹಿದನು ಪಾರ್ಥ ಮು
ಕುಂದರನು ಪೂರ್ವದಲಿ ನರನಾರಾಯಣಾಹ್ವಯದ
ಸಂದ ಖುಷಿಗಳು ಭೂಮಿ ಭಾರವ
ನೊಂದುಪಾಯದಲಪಹರಿಸಲೈ
ತಂದ ಹದನನು ತಿಳುಹಿ ಬಂದನು ಫಲುಗುಣನ ಹೊರೆಗೆ ೫೩

ನರನ ಚಿತ್ತಗ್ಲಾನಿಯನು ಪರಿ
ಹರಿಸಿದನು ಶೂಲದಲಿ ಮುಂಕೊಂ
ಡರಿ ಬಲವನಿರಿದಾತನಾರೆನಲಿಂದುಧರನೆಂದು
ಹರನ ಕರುಣದ ಹದನನೀತಂ
ಗೊರೆದು ಶತರುದ್ರೀಯವನು ವಿ
ಸ್ತರಿಸಿ ಬಿಜಯಂಗೈದನಾ ಮುನಿಪತಿ ನಿಜಾಶ್ರಮಕೆ ೫೪

ಬಿಸುಟು ಕೈದುಗಳೆಲ್ಲವನು ಕೈ
ವಶವ ಮಾಡಿತು ಸೇನೆ ಲಜ್ಜಾ
ರಸಕೆ ಗುರಿಯಾದಸ್ತ್ರ ಮರಳಿದು ಹರುಷಮಯರಸಕೆ
ಮುಸುಕುದಲೆಯಲಿ ಮುರಿದುಂದದು ಭಯ
ರಸದ ರಹಿಯಲಿ ತಿರುಗಿತಿದು ರವಿ
ಮುಸುಡ ತಿರುಹಿ ವಿರಾಗದಲಿ ಬೀಳ್ಕೊಟ್ಟನಂಬರವ ೫೫

ಆವ ಶರದಲಿ ಕೊರತೆ ನಿನ್ನವ
ರಾವ ಬಲದಲಿ ಕುಂದು ಭುವನದೊ
ಳೀವನೈ ಸಮುಜೋಳಿ ನಿನ್ನರಮನೆಯ ಸುಭಟರಿಗೆ
ಆವನಿದ್ದೇನಹುದು ಜಗದಧಿ
ದೈವದಲಿ ಸೆಣಸಿದಿರಿ ಪಾಂಡವ
ಜೀವಿಯೆಂದರಿದರಿದು ಗದುಗಿನ ವೀರನಾರಯಣ ೫೬

ಇತಿ ಶ್ರೀಮದಚಿಂತ್ಯಮಹಿಮ ಗದುಗು ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪರಿಪುಷ್ಟ ವಚಃಷಟ್ಪದೀನಿಕಾಯ
ಶ್ರೀಮತ್ಕುಮಾರವ್ಯಾಸ ಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ದ್ರೋಣಪರ್ವಂ ಸಮಾಪ್ತಮಾದುದು

ಕರ್ಣ ಪರ್ವ

ಮೊದಲನೆಯ ಸಂಧಿ

ಸೂ. ರಾಯ ಕಟಕಾಚಾರ್ಯನಾ ತರು
ವಾಯ ಸೇನಾಪಟ್ಟವನು ರಾ
ಧೇಯನಲಿ ರಚಿಸಿದನು ಮುದದಲಿ ಕೌರವರ ರಾಯ

ಕೇಳು ಜನಮೇಜಯ ಧರಿತ್ರೀ
ಪಾಲ ತೆಗೆದವು ಬಲವೆರಡು ನಿಜ
ಪಾಳಯಕೆ ಪರಿತೋಷ ಖೇದಸ್ತಿಮಿತವಿಕ್ರಮರು
ಕೋಲಗುರುವಿನ ಮರಣವಾರ್ತಾ
ಕಾಲಸರ್ಪನ ತಂದು ಸಂಜಯ
ಹೇಳಿಗೆಯನೀಡಾಡಿದನು ಧೃತರಾಷ್ಟ್ರನಿದಿರಿನಲಿ ೧

ಬೆದರಿತಾಯಾಸ್ಥಾನ ಧಿಗಿಲೆಂ
ದುದು ಧರಾಧೀಶ್ವರನ ತಂದೆಯ
ಹೃದಯದಲಿ ಹುರುಳೇನು ಬಳಿಕುಳಿದವರ ಮೋರೆಗಳ
ಕದಡಿತಂತಃಕರಣವರಸನ
ಕದಪು ಕೈಯಲಿ ಕೀಲಿಸಿತು ಹೇ
ಳಿದನು ಸಂಜಯ ಮತ್ತೆ ಮೇಲಣ ರಣದ ವಾರ್ತೆಯನು ೨

ಗುಡಿಯ ಕಟ್ಟಿಸು ಜೀಯ ಬರತುದು
ಕಡಲು ಮುರಿದುದು ಮೇರು ತಿರುಗಿತು
ಪೊಡವಿ ಬಿದ್ದುದು ಭಾನುಮಂಡಲವಹಹ ವಿತಳದಲಿ
ಮಡಿದುದೈ ನಿನ್ನಾನೆ ನಿನ್ನು
ಗ್ಗಡದ ಭಟ ಬೀಳ್ಕೊಂಡನೈ ಕಡಿ
ವಡೆದನೈ ಕಲಿ ಕರ್ಣನೊಸಗೆಯ ಮಾಡಹೇಳೆಂದ ೩

ಮೊದಲಲಿದ್ದುದು ಜೀವಕಳೆ ಹೃದ
ಯದಲಿ ಹೃದಯವನೊಡೆದು ಮಿಗೆ ಕಂ
ಠದಲಿ ಕವಿದುದು ಮಂಚದಲಿ ಮೈಮರೆದು ಮಲಗಿದನು
ಕೆದರಿತಲ್ಲಿಯದಲ್ಲಿ ರಾಯನ
ಹದನನರಿದೊಳಗೊಳಗೆ ರಾಣಿಯ
ರೊದರಲಂತಃಪುರದಲುಕ್ಕಿತು ಶೋಕರಸ ಜಲಧಿ ೪

ಬಾಯ ಬಸುರಿನ ನೊಸಲ ಹೊಯ್ಲಿನ
ರಾಯನರಸಿಯರರಸನಿದಿರಲಿ
ಹಾಯಿದರು ಭಿತ್ತಿಗಳನೊದರಿದರೊಡನೆ ದೆಸೆಯೊದರೆ
ರಾಯನಾವೆಡೆ ಜೀಯ ಕಲಿ ರಾ
ಧೇಯನಾವೆಡೆ ನೂರು ಮಕ್ಕಳು
ಬೀಯವಾದರೆ ಮಾವ ಎಂದರು ಸೊಸೆಯರಡಗೆಡೆದು ೫

ರವಕುಳವ ನಾನೇನ ಹೇಳುವೆ
ನವನಿಪತಿಯಾ ಕರ್ಣ ಮೊದಲಾ
ದವರ ರಾಣೀವಾಸ ಬಹಳಾಕ್ರಂದನಧ್ವನಿಯ
ಕವಿದುದೊಳಸೂರೆಗರು ಕೋಟೆಯ
ತವಕಿಗರು ಗುಜುಗುಜಿಸೆ ಬಿಗಿದವು
ಭವನ ಭವನ ಕವಾಟ ತತಿಗಾಳಾಯ್ತು ಗಜನಗರ ೬

ನೆರೆದುದಲ್ಲಿಯದಲ್ಲಿ ಸೂರೆಗೆ
ಹರಿದುದಲ್ಲಿಯದಲ್ಲಿ ಮನ ಮ
ತ್ಸರದ ಜಗಳಕೆ ಸೂಳುಬಂಟರು ಹೊಯ್ದರೊಳಗೊಳಗೆ
ಅರಮನೆಯಲಾ ಬೊಬ್ಬೆ ಹಸ್ತಿನ
ಪುರದಲೀ ಬೊಬ್ಬಾಟವಿನ್ನಾಳಿ
ದರಸುಗಳ ಪಾಡಾವುದೆಂದನು ಮುನಿ ನೃಪಾಲಂಗೆ ೭

ಸೂರೆ ಹೋದುದು ನಗರಿ ಖಳರಿಗೆ
ಮಾರಿದರು ಪಟ್ಟಣವನಕಟಾ
ಕಾರುಮದ್ದಿಗೆ ಹೋಹುದೇ ಕೈಮುಸಕವವನಿಪನ
ನೂರುಮಕ್ಕಳನಿಕ್ಕಿ ಸಾಧಿಸ
ಲಾರನೇ ಜಯಸಿರಿಯನೆಂದುರೆ
ಮೀರಿ ನುಡಿದುದು ಮಂತ್ರಿಗಳು ಧೃತರಾಷ್ಟ್ರನಿದಿರಿನಲಿ ೮

ಎರಡು ಗಲ್ಲದ ನಯನವಾರಿಯ
ಹರಿಕುಣಿಯ ನಿಲಿಸಿದನು ಸಂಜಯ
ನರಸನನು ಕುಳ್ಳಿರಿಸಿ ಬೆನ್ನಿಗೆ ಚಾಚಿದನು ಮಲಗ
ಅರಸ ಹದುಳಿಸು ನಿನ್ನ ಸೊಸೆಯರ
ಕರೆದು ಸಂತೈಸಕಟ ಹಸ್ತಿನ
ಪುರದ ಗಾವಳಿಗಜಬಜಕೆ ಡಂಗುರವ ಹೊಯ್ಸೆಂದ ೯

ಬೀದಿ ಬೀದಿಗಳೊಳಗೆ ಡಂಗುರ
ನಾದವೆಸೆದವು ಕೇರಿ ಕೇರಿಗೆ
ಕೈದುಕಾರರು ನೆರೆದು ನಿಂದರು ಸೂರೆಗರ ಕೆಡಹಿ
ಸುಯ್ದು ನಡಿಗಡಿಗೊಲೆದೊಲೆದು ಪರಿ
ಖೇದಶೋಕಜ್ವಲನ ಜನಿತ
ಸ್ವೇದ ಸಲಿಲ ಸ್ತಿಮಿತಕಾಯನು ರಾಯನಿಂತೆಂದ ೧೦

ಹೇಳು ಸಂಜಯ ನಮ್ಮ ಭಾಗ್ಯದ
ಶಾಳಿವನ ಫಲವಾಯ್ತಲಾ ಕೈ
ವೋಳವಿಸಿದನೆ ಕರ್ಣನಮರಸ್ತ್ರೀ ಕದಂಬದಲಿ
ಹೇಳು ಹೇಳೆನ್ನಾಣೆ ಮಾತಿನ
ಜಾಳಿಗೆಯ ಮರೆ ಬೇಡ ಕುರುಪತಿ
ಕಾಳಿಗದೊಳಸ್ತ್ರಮಿಸಿದನೆ ನುಡಿಯಂಜಬೇಡೆಂದ ೧೧

ಸಾವೆನಾನೆಂದಂಜದಿರು ಕ
ರ್ಣಾವಸಾನವ ಕೇಳಿ ತನ್ನಯ
ಜೀವವಿದಲಾ ದೇಹದಲಿ ಬೇರಿನ್ನು ಕೆಲಬರಲಿ
ಸಾವೆನೇ ತಾನಕಟ ಕೌರವ
ಜೀವಿಸಲಿ ವೇಣಳಿಯಲೆಮಂಗಿ
ನ್ನಾವ ತೊಡಕಿಲ್ಲಿನ್ನು ವಜ್ರಶರೀರ ತಾನೆಂದ ೧೨

ಘಾಯವಡೆದನು ಭೀಷ್ಮ ಬಳಿಕಿನೊ
ಳಾಯುಧದ ಗುರು ತೊಡಬೆಗಳಚಿದ
ನೀಯವಸ್ಥೆಗೆ ನಮ್ಮ ತಂದನು ಭಾನುನಂದನನು
ಸಾಯನೇ ಮಗನಿನ್ನು ಸಾಕಾ
ನಾಯ ನುಡಿಯಂತಿರಲಿ ಕರ್ಣಂ
ಗಾಯಿತೇ ಕಡೆ ಶೋಕವನು ವಿಸ್ತರಿಸಿ ಹೇಳೆಂದ ೧೩

ಸರಳ ಕೊರತೆಯೊ ಸಾರಥಿಯ ಮ
ತ್ಸರವೊ ರಥದ ವಿಘಾತಿಯೋ ದು
ರ್ಧರ ಧನುರ್ಭಂಗವೊ ಮಹಾಸ್ತ್ರವ್ಯಥೆಯೊ ರವಿಸುತನ
ಹುರುಳುಗೆಡಿಸಿದರೆಂತು ರಿಪು ರಾ
ಯರಿಗೆ ನಾವ್ ಗೋಚರವೆ ದುರಿತೋ
ತ್ಕರುಷವೈಸಲೆ ನಮ್ಮ ಕೆಡಿಸಿತು ಶಿವಶಿವಾ ಎಂದ ೧೪

ಹರಹುಗೆಟ್ಟುದು ತೇರು ಸಾರಥಿ
ಹುರುಳುಗೆಡಿಸಿಯೆ ನುಡಿದನಂಬಿನ
ಕೊರತೆ ತಾ ಮುನ್ನಾಯ್ತು ದೈವದ್ರೋಹಿಗಳು ನಿಮಗೆ
ಅರಿವಿಜಯವೆಲ್ಲಿಯದು ನೀವ್ ಮನ
ಬರಡರೈ ನಿಮ್ಮನ್ವಯವ ಸಂ
ಹರಿಸಿದಿರಿ ಸಾಕೆಂದು ಸಂಜಯ ತೂಗಿದನು ಶಿರವ ೧೫

ಸುರ ನರೋರಗರರಿಯೆ ನಾವ್ ಬಾ
ಹಿರರು ಭಂಗಿಸಬೇಡ ಸಾಕಂ
ತಿರಲಿ ಕರ್ಣಾಹವದ ಕರ್ಣಾಮೃತವ ಸುರಿ ಸಾಕು
ಅರಿಗಳಭ್ಯುದಯವನು ನಮ್ಮಪ
ಸರಣವನು ಕಿವಿಯಾರೆ ಕೇಳುವ
ಪರಮ ಸುಕೃತಿಗಳಾವು ನೀ ಹೇಳಂಜಬೇಡೆಂದ ೧೬

ಹೇಳಿದನು ಬಳಿಕೆರಡು ಥಟ್ಟಿನೊ
ಳಾಳು ಕುದುರೆಯ ಗಜ ರಥವ ಭೂ
ಪಾಲರಳಿದುಳಿದವರ ಲೆಕ್ಕವನೈದೆ ವಿಸ್ತರಿಸಿ
ಕೇಳು ನಿನ್ನಾತನ ವಿನೋದದ
ಖೂಳ ಬೋಳೆಯತನದಲೊದಗಿದ
ಬಾಳಿಕೆಯ ಬೀಸರವನೆಂದನು ಸಂಜಯನು ನಗುತ ೧೭

ತೊಡರ ತೆಗೆದರು ಕೈಯಡಾಯ್ದವ
ಜಡಿಯಲಮ್ಮರು ಹೊತ್ತ ದುಗುಡದ
ನಿಡು ಮುಸುಕುಗಳ ಬಿಗಿದ ಬೆರಗಿನ ಬಿಟ್ಟ ಕಣ್ಣುಗಳ
ಒಡೆಯನಿದಿರಲಿ ಕುಳ್ಳಿರದೆ ಕೆಲ
ಕಡೆಯ ಕೈದೀವಿಗೆಯ ಮರೆಯಲಿ
ಮಿಡುಕದಿರ್ದುದು ರಾಯನೋಲಗದೊಳಗೆ ಪರಿವಾರ ೧೮

ಸಾಲ ಸಾವಿರ ದೀವಿಗೆಯ ಹರಿ
ದಾಳಿಗಳುಕದೆ ನೃಪರ ಮೋರೆಗ
ಳೋಳಿಗಳ ನೆರೆ ಹೊದ್ದಿ ಕತ್ತಲೆ ನಿಂದುದಲ್ಲಲ್ಲಿ
ಹೇಳಲೇನದ ಬಹಳ ದುಗುಡದ
ಪಾಳೆಯಂವೊ ನಿನ್ನಾತನೋಲಗ
ಶಾಲೆಯೋ ನಾವರಿಯೆವೆಂದನು ಸಂಜಯನು ನೃಪಗೆ ೧೯

ಎಲೆ ಮಿಡುಕದಾಸ್ಥಾನ ವೀಳೆಯ
ದೆಲೆಯ ಮಡಿಸುವ ರಭಸವಿಲ್ಲೊಳ
ಗೊಳಗೆ ಸನ್ನೆಗಳೋರೆಗೊರಳುಂಗಳೌಡುಂಗಚ್ಚುಗಳ
ಹಳಸಿದಗ್ಗಳಿಕೆಗಳ ಮಿಸಾಸಲು
ಗಳೆದ ಬಿರುದಿನ ಮಾನಭಂಗದ
ಕಳವಳದ ಕನಸುಗಳಲಿದ್ದುದು ರಾಯನಾಸ್ಥಾನ ೨೦

ಕೆತ್ತು ಕೊಂಡಿರಲೇಕೆ ನೀವಿ
ನ್ನುತ್ತರಾಯಿಗಳೆಮ್ಮ ಭಾಗ್ಯದ
ಬಿತ್ತು ಹುರಿದರೆ ಬಿರುದ ಭಟರಿದ್ದೇನಮಾಡುವರು
ಮೆತ್ತಿದಂಬಿನ ಮೆಯ್ಯ ಭೀಷ್ಮನು
ಹೊತ್ತ ಕೈದುವ ಬಿಸುಟ ಕಳಶಜ
ನುತ್ತಮಿಕೆಗಳ ಮೆರೆದರೆಂದನು ಕೌರವರ ರಾಯ ೨೧

ಬಿಗಿದ ತಿಮಿರದ ಕೆಚ್ಚು ಸೂರ್ಯನ
ಸೊಗಡು ಹೊಯ್ದುರೆ ಮುರಿಯದೇ ಕಾ
ಳೆಗಕೆ ಕರ್ಣನ ಕೈದು ಭಂಡಾರಿಸಿದುದಿನ್ನಬರ
ತೆಗೆಸುವೆವು ನಾಳಿನಲಿ ನಿಮ್ಮಯ
ಮೊಗದ ದುಗುಡದ ದಡ್ಡಿಯನು ಮೈ
ದೆಗೆಯದಿರಿ ಕಲಿಯಾಗಿಯೆಂದನು ನೃಪತಿ ಸುಭಟರಿಗೆ ೨೨

ಜೀಯ ಸಂಶಯವಿಲ್ಲ ಗುರು ಗಾಂ
ಗೇಯರಳುಕಿದರೇನು ಕಲಿ ರಾ
ಧೇಯನೇ ವಜ್ರಾಂಗಿಯಲ್ಲಾ ನಮ್ಮ ಮೋಹರಕೆ
ರಾಯ ನೀ ಪತಿಕರಿಸಿದರೆ ಚ
ಕ್ರಾಯುಧನ ಚಾತುರ್ಯ ಕೊಳ್ಳದು
ಜೀಯ ಕರ್ಣನ ಮುಂದೆಯೆಂದುದು ನಿಖಿಳ ಪರಿವಾರ ೨೩

ಬೇರೆ ತನಗಗ್ಗಳಿಕೆಯೋಲೆಯ
ಕಾರತನವೇ ರಾಯ ಮನವೊಲಿ
ದೇರಿಸಿದರೇರುವುದು ದೊರೆ ಮನಮುರಿಯೆ ಕುಂದುವುದು
ತೋರಿ ನುಡಿದರೆ ಭೀಷ್ಮ ದ್ರೋಣರು
ಜಾರಿಸಿದ ರಣವೆಮಗೆ ಸದರವೆ
ದೂರುವವರಾವಲ್ಲವೆಂದನು ಭಾನುಸುತ ನಗುತ ೨೪

ಸಾಕದಂತಿರಲಿನ್ನು ಥಟ್ಟಿಂ
ಗಾಕೆವಾಳರ ಮಾಡು ಸಾಕಾ
ಸ್ತೋಕಪುಣ್ಯರ ಮಾತದೇತಕೆ ಗುರು ನದೀಸುತರ
ಸಾಕಿ ಸಲಹಿದೆ ಕರ್ಣನನು ಹುರು
ಡೇಕೆ ಗುಣದೊಳಗೀತ ಸೇನಾ
ನೀಕಭಾರದ ಹೊರಿಗೆಗಹನೆಂದನು ಕೃಪಾಚಾರ್ಯ ೨೫

ಎಮ್ಮ ತೋರಿಸಬೇಡ ಸುಖದಲಿ
ನಿಮ್ಮ ಚಿತ್ತಕೆ ಬಹಂದ ಮಾಡುವು
ದೆಮ್ಮ ಹೃದಯ ವ್ಯಥೆಯ ನಾವಿನ್ನಾಡಿ ಫಲವೇನು
ಎಮ್ಮ ಪುಣ್ಯದ ಬೆಳೆಗಳೊಣಗಿದ
ಡಮ್ಮಿ ಮಾಡುವುದೇನು ಕರ್ಣನು
ನಮ್ಮ ದಳವಾಯೆಂದನಶ್ವತ್ಥಾಮನರಸಂಗೆ ೨೬

ಆ ಮಹಾರಥ ಭೀಷ್ಮನೇ ಸ್ವೇ
ಚ್ಛಾಮರಣೆಯಾಚಾರ್ಯಚಾಪ
ವ್ಯೋಮಕೇಶನು ಹೊಕ್ಕು ಕಾಣರು ಹಗೆಗೆ ಹರಿವುಗಳ
ಆ ಮಹಾ ನಾರಾಯಣಾಸ್ತ್ರದ
ಸೀಮೆ ಸೀದುದು ಮಿಕ್ಕ ಭಟರು
ದ್ದಾಮರೇ ಸಾಕಿನ್ನು ಸೇನಾಪತಿಯ ಮಾಡೆಂದ ೨೭

ಕರಸಿದನು ಭೂಸುರರನೌದುಂ
ಬರದ ಮಣಿ ಮಡಿವರ್ಗ ದೂರ್ವಾಂ
ಕುರ ಸಿತಾಕ್ಷತ ಧವಳಸರ್ಷಪ ವರಫಲಾವಳಿಯ
ತರಿಸಿದನು ಹೊಂಗಳಶ ತತಿಯಲಿ
ವರ ನದೀವಾರಿಗಳನಾಡಂ
ಬರದ ಲಗ್ಗೆಯಲೊದರಿದವು ನಿಸ್ಸಾಳಕೋಟಿಗಳು ೨೮

ವಿರಚಿಸಿತು ಪಟ್ಟಾಭಿಷೇಕೋ
ತ್ಕರುಷ ಮಂತ್ರಾಕ್ಷತೆಯ ಮಳೆಗಳ
ಕರೆದರವನೀಸುರರು ಜಯರವಮೇಘಘೋಷದಲಿ
ಗುರುಸುತಾದಿ ಮಹಾಪ್ರಧಾನರು
ದರುಶನವ ನೀಡಿದರು ಕರ್ಣನ
ಬಿರುದಿನುಬ್ಬಟೆಲಹರಿ ಮಸಗಿತು ವಂದಿಜಲಧಿಯಲಿ ೨೯

ಅರಳಿತರಸನ ವದನ ಶಕುನಿಯ
ಹರುಷಮಿಗೆ ದುಶ್ಶಾಸನಂಗು
ಬ್ಬರಿಸೆ ರೋಮಾವಳಿ ವಿಕರ್ಣಾದಿಗಳ ಮನ ನಲಿಯೆ
ಗುರುಜ ಕೃಪ ಕೃತವರ್ಮ ಶಲ್ಯಾ
ದ್ಯರಿಗೆ ಹೊಸಕದೊಲಹು ಮಿಗಿಲಾ
ಯ್ತಿರುಳು ಕರ್ಣಗೆ ಪಟ್ಟವಾಯಿತು ಭೂಪ ಕೇಳೆಂದ ೩೦

ಎರಡನೆಯ ಸಂಧಿ

ಸೂ. ಭೀಮ ವಿಕ್ರಮಕುರುಬಲದೊಳು
ದ್ದಾಮ ಕರ್ಣಾಹವದೊಳಗ್ಗದ
ಕ್ಷೇಮಧೂರ್ತಿ ನೃಪಾಲಕನ ಕೆಡಹಿದನು ಕಲಿಭೀಮ

ಮಗನು ದಳಪತಿಯಾದ ಗಡ ಕಾ
ಳೆಗವ ನೋಡುವೆನೆಂಬವೊಲು ಜಗ
ದಗಲದಲಿ ನೆರೆ ಕಡಿತವಿಕ್ಕಿತು ತಿಮಿರವನದೊಳಗೆ
ಹೊಗರು ಕುವಳಯಕಳಿಯೆ ಸೊಂಪಿನ
ನಗೆ ಸರೋರುಹಕೊಗೆಯೆ ವಿರಹದ
ಢಗೆ ರಥಾಂಗದೊಳಳಿಯೆ ರವಿಯುದಯಾಚಳಕೆ ಬಂದ ೧

ಸೂಳು ಮಿಗಲಳ್ಳಿರಿದವುರು ನಿ
ಸ್ಸಾಳಕೋಟಿಗಳುದಯದಲಿ ದಿಗು
ಜಾಲ ಜರಿಯಲು ರಖಾಡಿಗೆದರುವ ಗೌರುಗಹಳೆಗಳ
ತೂಳುವರೆಗಳ ರಾಯ ಗಿಡಿಗನ
ಘೋಳ ಘೋರದ ಘೋಷವವನಿಯ
ಸೀಳೆ ನಡೆದುದು ಸೇನೆ ರವಿನಂದನನ ನೇಮದಲಿ ೨

ಮೋಹರಿಸಿತಿದು ನಡೆದು ಮಕರ
ವ್ಯೂಹದಲಿ ಬಳಿಕರ್ಧಚಂದ್ರ
ವ್ಯೂಹದಲಿ ಬಂದೊಡ್ಡಿ ನಿಂದುದು ಪಾಂಡುಸುತಸೇನೆ
ಮೋಹರಿಸಲೊಡೆವೆರಸಿ ಹೊಯ್ದರು
ಗಾಹುಗತಕವನುಳಿದು ಚೂಣಿಯ
ಸಾಹಸಿಗರು ಸನಾಮರೊದಗಿದರೆರಡು ಥಟ್ಟಿನಲಿ ೩

ಹೊಯ್ಲು ಮುಗ್ಗಿತು ಭಟರು ವೆಗ್ಗಳ
ಕೈದುಕಾರರು ತಲೆಗೆ ಸಂದರು
ಮೈದೆಗೆಯದೊಡವೆರಸಿ ಹೊಕ್ಕರು ಬೇಹಬೇಹವರು
ಕೊಯ್ದ ಕೊರಳಿನ ಕೊರೆದ ತೋಳಿನ
ಹಾಯ್ದ ಮೂಳೆಯ ಸುರಿವ ಕರುಳಿನ
ಲೆಯ್ದೆ ಪಡೆಗೇರಾಯ್ತು ಚೂಣಿಯ ಚಾತುರಂಗದಲಿ ೪

ಇಂದು ಬರಹೇಳಜುನನ ರಣ
ವಿಂದಲೇ ಭೀಮಂಗೆ ಮನದಲಿ
ಕಂದುಕಸರಿಕೆ ಬೇಡ ಕಾದಲಿ ಧರ್ಮನಂದನನು
ಹಿಂದೆ ನಂಬಿಸಿ ಭೀಷ್ಮಗುರುವನು
ಕೊಂದ ಗೆಲುವಿನಲುಬ್ಬ ಬೇಡೆಮ
ಗಿಂದು ದಳವಾಯ್ ಕರ್ಣನೆಂದುದು ಭಟರು ಬೊಬ್ಬಿರಿದು ೫

ತೇರು ಬಿಟ್ಟವು ಸೂಠಿಯಲಿ ಜ
ಜ್ಝರ ರಾವ್ತರು ವಾಘೆ ಸರಿಸದ
ಲೇರಿದರು ಕಾರ್ಮುಗಿಲ ಬಲವೆನೆ ಕವಿದವಾನೆಗಳು
ಆರಿದರೆ ನೆಲ ಬಿರಿಯೆ ಬೆರಸಿತು
ಪೌರಕರು ಸಬಳಿಗರು ಬಿಲ್ಲಿನ
ಭೂರಿ ಭಟರಳ್ಳಿರಿದು ಕೆಣಕಿತು ಕೆದರಿ ರಿಪುಬಲವ ೬

ಮುರಿಯದಹಿತರ ಥಟ್ಟು ನಮ್ಮದು
ತೆರಹಂಗೊಡದೌಂಕಿತ್ತು ದೊರೆಗಳು
ಹೊರಗೆ ಲಗ್ಗೆಯ ಮಾಡಿ ತೋರಿದರೊಡನೆ ಪಡಿಬಲವ
ಉರುಬಿದರು ವೃಷಸೇನ ಸೌಬಲ
ಗುರುಜ ಕೃಪ ಕೃತವರ್ಮ ದುರ್ಮುಖ
ವರ ವಿಕರ್ಣ ಕ್ಷೇಮಧೂರ್ತಿ ಬೃಹದ್ರಥಾದಿಗಳು ೭

ಸೂತಸುತ ದಳಪತಿಯೆ ಘಡ ಮು
ಯ್ಯಾಂತರೇ ಮುಂಬಿಗರು ಬಿರುದಿನ
ಬೂತುಗಳ ಬೊಬ್ಬಾಟ ಬಿಡದೇ ಕಂಡು ಕಾಣರಲ
ಸೋತ ಸಮರದ ಕೇಣಿಕಾರರು
ಕೂತರೋ ಜಯಸಿರಿಗೆ ಹೊಯ್‌ಹೊ
ಯ್ಯಾತಗಳನೆನುತೇರಿದರು ಪಾಂಡವ ಮಹಾರಥರು ೮

ನೂಕಿತೊಂದೇ ವಾಘೆಯಲಿ ರಥ
ನಾಕು ಸಾವಿರ ಬಲುಗುದುರೆ ಹದಿ
ನಾಕುಸಾವಿರ ನೂರು ಕರಿಘಟೆ ಲಕ್ಕ ಪಾಯದಳ
ಜೋಕೆ ಜವಗೆಡೆ ಮುರಿವಡೆದು ಬಲ
ದಾಕೆವಾಳರು ಸರಿಯೆ ಸೋಲದ
ನೂಕು ನೂಕಾಯಿತ್ತು ಕೌರವರಾಯ ಸೇನೆಯಲಿ ೯

ಘಡಘಡೆತ್ತಲು ಸ್ವಾಮಿದ್ರೋಹರು
ಸಿಡಿದರೋ ನಿಜಕುಲದ ಬೇಗ್ಗಳ
ಕಡಿದರೋ ಕುರುಬಲದ ಕಾಹಿನ ಪಟ್ಟದಾನೆಗಳು
ಕೊಡನ ಫಣಿಯಿದು ಪಾಂಡವರ ಬಲ
ತುಡುಕಬಹುದೇ ಎನುತ ಸೇನೆಯ
ತಡೆದು ನಿಂದನು ಕ್ಷೇಮಧೂರ್ತಿ ಸಹಸ್ರಗಜಸಹಿತ ೧೦

ತರಿಸಿ ಲೋಹದ ಜತ್ತರಟ್ಟವ
ಹರಹಿದರು ಸೂಲಿಗೆಯ ಬಂಡಿಯ
ನಿರಿಸಿದರು ಕೆಲಬಲದ ಕಡೆಯಲಿ ಸಬಳಿಗರ ನಿಲಿಸಿ
ತುರಗ ರಥ ಬಲ್ಲಾಳನೊತ್ತಾ
ಗಿರಿಸಿ ಲಗ್ಗೆಯ ಲಹರಿಯಲಿ ಮೋ
ಹರಿಸಿದರು ಪಾಂಚಾಲ ಕೈಕೆಯರವರ ಥಟ್ಟಿನಲಿ ೧೧

ನೀಡಿ ಬರಿಕೈಗಳಲಿ ಸೆಳೆದೀ
ಡಾಡಿದವು ಬಂಡಿಗಳನೌಕಿದ
ಕೋಡ ಕೈಯಲಿ ಸಬಳಿಗರ ಸೀಳಿದವು ದೆಸೆದೆಸೆಗೆ
ಹೂಡು ಜಂತ್ರದ ಜತ್ತರಟ್ಟವ
ನಾಡಲೇತಕೆ ಹಿಂದಣೊಡ್ಡನು
ಝಾಡಿಸಿದವೀ ಕ್ಷೇಮಧೂರ್ತಿ ನೃಪಾಲನಾನೆಗಳು ೧೨

ರಾಯದಳ ಕಳವಳಿಸೆ ಗಜಘಟೆ
ಘಾಯಘಾಯಕೆ ನೆಲನ ಕೊಂಡವು
ಹಾಯಿದವು ರಥ ಹಯವ ಸೆಳೆದವು ಹೊದರ ಹರೆಗಡಿದು
ನಾಯಕರ ಕೆಡೆನುಡಿವ ಬೈಗುಳ
ಬಾಯ ಬೊಬ್ಬೆಯ ಕೈಯ ಹೊಯ್ಲುಗಳ
ದಾಯಿಗರಲೇ ಎನುತ ಮೂದಲಿಸಿದನು ತಮ್ಮೊಳಗೆ ೧೩

ಕೆದರಿತರನೆಲೆ ರಾಯ ಥಟ್ಟನು
ಕೆದರಿಸಿದವಾನೆಗಳು ಹಗೆಗಳ
ಮದಮುಖಕೆ ಮಾರೊಡ್ಡ ಮೆರೆದರೆ ಪೂತುರೇ ಎನುತ
ತುದಿವೆರಳ ತುಟಿಯುಬ್ಬರಕೆ ಗಜ
ಬೆದರೆ ಗಜರೋಹಕರ ಗರ್ಜಿಸಿ
ಗದೆಯ ತಿರುಹುತ ಹೊಕ್ಕನಿವರೊಡ್ಡಿನಲಿ ಕಲಿಭೀಮ ೧೪

ಗರುಡನೂರವರೆರೆವರೇ ನಾ
ಗರಿಗೆ ತನಿಯನು ಭೀಮಸೇನನ
ಬಿರುದಿನೋಲೆಯಕಾರರೇನಂಜುವರೆ ಮಾರ್ಬಲಕೆ
ಕರಿಘಟೆಯ ಕೆದರಿದರು ಕೇಣದ
ಧುರವ ಬಲ್ಲರೆ ಗಜದ ಕರುಳಲಿ
ಕರುಳ ತೊಡಕಲು ಬಿದ್ದು ವೈಸಾವಿರ ಮಹಾರಥರು ೧೫

ಮುಂಗುಡಿಯ ಮುರಿದೌಕಿ ಭೀಮನ
ಗಂಘವಿಸಿದನು ಕ್ಷೇಮಧೂರ್ತಿ ಮ
ತಂಗಜದ ಮೇಲೆಸುತ ಬಲು ನಾರಾಚ ಸೋನೆಯಲಿ
ಅಂಘವಣೆಯಹುದೋ ಮಹಾದೇ
ವಂಗೆ ನೂಕದು ಪೂತು ಮಝರೆಯ
ಭಂಗನೋ ನೀನೆನುತ ಮೂದಲಿಸಿದನು ಕಲಿಭೀಮ ೧೬

ಮೇಲುಮಾಯದ್ದಾರೋಹಕರ ಹಿಂ
ಗಾಲ ಹಿಡಿದೀಡಾಡಿ ರಿಪುಗಜ
ಜಾಲದೊಳಗೊಂದಾನೆಯನು ತಾನೇರಿ ಬೊಬ್ಬಿರಿದು
ಘೀಳಿಡುವ ಕರಿ ಕೆದರಲಂಕುಶ
ವಾಳೆ ನೆತ್ತಿಯನಗೆದು ದಂತಿಯ
ತೂಳಿಸಿದನಾ ಕ್ಷೇಮಧೂರ್ತಿಯ ಗಜದ ಸಮ್ಮುಖಕೆ ೧೭

ಇದು ವಿನೋದವಲೇ ಮದೀಯಾ
ಭ್ಯುದಯುವಿದಲೇ ನಮ್ಮ ಕೋಪವ
ನಿದಿರುಗೊಂಡವನಿವನಲೇ ಎನುತೆಚ್ಚನಾ ಭೀಮ
ಸದೆಗ ನೀ ಸಾರೆಲವೊ ಭಾರಿಯ
ಮದಗಜದ ಬಡಿಹೋರಿ ಹೋಗೆನು
ತೊದರಿ ಭೀಮನ ಮುಸುಕಿದನು ನಾರಾಚಸೋನೆಯಲಿ ೧೮

ಆಗಲೀ ನಾಲಗೆಯ ಸಾಲವ
ನೀಗ ಕೈಯಲಿ ತಿದ್ದಿ ಕೊಡುವರೆ
ಹೋಗದೇ ಹೊತ್ತಿಹವೆ ಹೇಳೆನುತೆಚ್ಚನಾ ಭೀಮ
ಆಗಳಾವುದು ನೆಲನು ನಭ ದಿಗು
ಭಾಗವೆಲ್ಲಿಯದೆನಲು ಕಣೆಗಳ
ತೂಗಿ ತುರುಗಿದವರಿಭಟನ ಕರಿಘಟೆಯ ಮೈಗಳಲಿ ೧೯

ಸರಳ ಮಳೆಯಲಿ ನನೆದು ಕರಿಘಟೆ
ಯುರುಳಿದವು ಕಲ್ಪಾಂತಮರುಷದೊ
ಳುರುಳುವದ್ರಿಗಳಂತೆಯೆಸೆದವು ವೈರಿದಂತಿಗಳು
ಎರಡು ಸೀಳಾಯ್ತುವನ ಕರಿ ಧರೆ
ಗಿರದೆ ದೊಪ್ಪನೆ ಹಾಯ್ದು ಖಾತಿಯೊ
ಳುರವಣಿಸಿದನು ಕ್ಷೇಮಧೂರ್ತಕ ಸೆಳೆದೊಡಾಯುಧದಿ ೨೦

ಕುಣಿದು ಪುಟನೆಗೆದರಿ ಗಜವ ಹೊ
ಯ್ದುಣೆದು ಹಿಂಗದ ಮುನ್ನ ತಲೆ ಮೇ
ಲಣಿಗೆ ಚಿಗಿದುದು ಮುಂಡ ನಡೆದುದು ನೂರು ಹಜ್ಜೆಯನು
ಬಣಗು ನೀನಕಟಕಟ ಭೀಮನ
ಕೆಣಕಿ ಬದುಕಿದೆಯೆನುತಲಪ್ಸರ
ಗಣಿಕೆಯರು ನಗುತವನ ಕೊಂಡೊಯ್ದರು ವಿಮಾನದಲಿ ೨೧

ಮೂರನೆಯ ಸಂಧಿ

ಸೂ. ರಣಭಯಂಕರನಹಿತ ಸುಭಟರ
ಹಣಿದವನು ಹೊಯ್ದಾಡಿ ಸಾತ್ಯಕಿ
ಕೆಣಕಿದನು ಕಲಕಿದನು ಕುರುಸೇನಾ ಮಹಾರ್ಣವವ

ಬೀಳಲಗ್ಗದ ಕ್ಷೇಮಧೂರ್ತಿ ನೃ
ಪಾಲಕನ ಪರಿವಾರ ರೋಷ ಕ
ರಾಳ ಶಿಖಿಪರಿತಪ್ತ ಕಂಪಿತ ಖಡ್ಗದೊಗ್ಗಿನಲಿ
ಆಳಿದನ ಮರಣದಲಿ ಹಿಂದಣ
ಕೂಳಿನಾಸೆಯ ಕುನ್ನಿಗಳಿರೆನು
ತಾಳು ಕವಿದುದು ಭೀಮ ಘಡ ಘಡ ನಿಲ್ಲು ನಿಲ್ಲೆನುತ ೧

ಕರೆದು ಮೂದಲಿಸಿದರೆ ಹುಲ್ಲೆಯ
ಮರಿಗಳಿಗೆ ಖತಿಗೊಂಬುದೇ ಮದ
ಕರಿ ಕರೂಷದ ಕೊಬ್ಬಿನವದಿರು ಹಿಂದೆ ಹತ್ತಿದರೆ
ಮರಳಬಲ್ಲನೆ ಭೀಮನಿವರ
ಬ್ಬರಿಸಿ ಕವಿದರು ಹತ್ತು ಸಾವಿರ
ತುರಗ ಸರಿಸದಲೇರಿದವು ಪಡಿಮುಖದ ಬಲ ಬೆದರೆ ೨

ರಾವುತೋ ಎನಿತೊಂದು ಹಂತಿಯ
ಸಾವಿನಾತಗಳೇರಿದರು ಪರಿ
ಧಾವನೋದ್ಧತ ಧೂಳಿ ಮುಸುಕಿತು ತರಣಿ ಮಂಡಲವ
ಆ ವೃಕೋದರ ಗತಿಯ ಕಂಡನು
ರಾವುತರ ದೃಢವಾಘೆ ವಾಘೆಯ
ಲಾವಣಿಗೆ ಲೇಸೆನುತ ಸಾತ್ಯಕಿ ತುಡುಕಿದನು ಧನುವ ೩

ಅರರೆ ರಾವುತು ಜಾಗು ಸ್ವಾಮಿಯ
ಹರಿಬಕೋಸುಗ ಹಗೆಯ ಹೊಯ್ದಿರಿ
ಬಿರುದರಹುದೋ ಎನುತ ಮಿಾರುವ ಹಯವ ಮುರಿಯೆಸುತ
ಸರಳನೊಂದನೆ ತೊಡಚಿ ತುರಗದ
ಕೊರಳ ವಾಘೆಯ ಕರವ ರಾವ್ತರ
ಶಿರವನೆಚ್ಚನು ಕೊಂದನೀಪರಿ ಹತ್ತು ಸಾವಿರವ ೪

ಬಿದ್ದವಗಣಿತ ತುರಗ ದಳ ಕೈ
ಮುದ್ದೆಗೊಂಡನು ಕಾಲನಸುವಿಡಿ
ದಿದ್ದವರ ನಾ ಕಾಣೆ ತೊಡಕಿದ ವೈರಿ ಬಲದೊಳಗೆ
ಹದ್ದು ಕಾಗೆಗೆ ನಿನ್ನವರು ಸಾ
ಲಿದ್ದು ಬೋನವ ಸವಸಿದರು ಬಲ
ವಿದ್ದು ಮಾಡುವುದೇನು ನಿಮಗಿನ್ನರಸ ಕೇಳೆಂದ ೫

ಥಟ್ಟು ಮುರಿದುದು ಕೊಂಡ ನೆಲನನು
ಬಿಟ್ಟು ಹಿಂಗಿತು ನಮ್ಮ ಬಲ ಮೈ
ಬಿಟ್ಟು ತಲೆದೋರಿದನು ಸಾತ್ಯಕಿ ದೊರೆಗಳಿದಿರಿನಲಿ
ದಿಟ್ಟನಾರಿವನೀಸು ಮುಂಪ್ಪಾ
ಮುಂಪ್ಪಿಯಲಿ ಬಂದವನೆನುತ ಜಗ
ಜಟ್ಟಿಗಳು ವಿಂದಾನುವಿಂದರು ನಿಂದರಿದಿರಿನಲಿ ೬

ಕವಿದುದಿವದಿರ ಸೇನೆ ಸಾತ್ಯಕಿ
ಹವಣನರಿಯದೆ ಹೊಕ್ಕು ಸಿಕ್ಕಿದ
ನವರೊಳಗೆ ಕಟ್ಟಿದವು ಸುತ್ತಲು ಸಾವಿರಾನೆಗಳು
ನವ ಸಹಸ್ರ ತುರಂಗ ಕಾಲಾ
ಳವಗಡಿಸಿತ್ತೈವತ್ತು ಸಾವಿರ
ವವನಿತಳ ನುಗ್ಗಾಯ್ತು ಪದಘಟ್ಟಣೆಯ ಘಲ್ಲಣೆಗೆ ೭

ಕೆಣಕಿದರೆ ಭುಗಿಲೆಂದುದೀತನ
ರಣ ಪರಾಕ್ರಮವಹ್ನಿ ಕರಡದ
ಬಣಬೆ ಸಿಕ್ಕಿತು ಕಾಳುಗಿಚ್ಚಿನ ಬಾಯ ಬಗರಗೆಗೆ
ಕಣೆಯ ಕಾಣೆನು ಸುತ್ತಲೊಟ್ಟುವ
ಹೆಣನ ಕಂಡೆನಿದಾವ ಬಾಳೆಯ
ಹಣಿದವೋ ನಿನ್ನಾಳು ಕುದುರೆಯನರಿಯೆ ನಾನೆಂದ ೮

ದೊರೆಗಳವದಿರು ತಮ್ಮ ಬಲ ಸಂ
ವರಣೆ ನೆಗ್ಗಿದ ಹೇವದಲಿ ಹೊಡ
ಕರಿಸಿ ಹೊಕ್ಕರು ಹೂಳಿದರು ಸಾತ್ಯಕಿಯನಂಬಿನಲಿ
ಸರಳ ಬರವೊಳ್ಳಿತು ಮಹಾ ದೇ
ವರಸು ಮಕ್ಕಳಲೇ ವಿರೋಧವೆ
ಹರಹರತಿಸಾಹಸಿಕರಹುದಹುದೆನುತ ತೆಗೆದೆಚ್ಚ ೯

ಏನನೆಂಬೆನು ಮೊದಲ ಲಗ್ಗೆಯ
ಲಾ ನಿಶಿತಶರ ದೈತ್ಯಭಟ ವಿಂ
ದಾನುವಿಂದರ ಜೀವ ಧುಮ್ಮಿಕ್ಕಿದುದು ಜವಪುರಿಗೆ
ಚೀನ ಭೋಟ ಕರೂಷ ಖರ್ಪರ
ಸೂನು ಜೋನೆಗ ತುರಕ ಬರ್ಬರ
ಸೇನೆ ತಾಗಿತು ತಾಗಿದಾಗಳೆ ನೀಗಿದುದು ತಲೆಯ ೧೦

ಮುರಿದುದಿದು ನಮ್ಮವರು ಸಾತ್ಯಕಿ
ಯುರುಬೆಗಾನುವರಿಲ್ಲ ದೊರೆ ಕೈ
ಮರೆದನೋ ಕಾಳಾಯ್ತೆನುತ ಕುರುಸೇನೆ ಕಳವಳಿಸೆ
ಜರೆದು ಮೂದಲಿಸಿದನು ಮಾದ್ರೇ
ಶ್ವರನ ದುಶ್ಶಾಸನನ ಸೌಬಲ
ಗುರುಜ ಕೃತವರ್ಮಾದಿ ಪರಿವಾರವನು ಕಲಿಕರ್ಣ ೧೧

ಪೂತು ಮಝು ದಳಪತಿಯ ಚಿತ್ತದ
ಖಾತಿ ಕೊಬ್ಬಿತು ನಮ್ಮ ಭುಜ ಬಲ
ವೇತಕಿದು ಬಳಿಕೇನು ಸಾತ್ಯಕಿ ಸರಸವೇ ತಮಗೆ
ಭೂತನಾಥನ ಕಡುಹ ತಡೆವಭಿ
ಜಾತರಲ್ಲಾ ತಾವೆನುತ ನಿಜ
ಸೂತರನು ಬೋಳೈಸಿ ನೂಕಿತು ಗುರುಸುತಾದಿಗಳು ೧೨

ಮುರಿದ ಬಲ ಗರಿಗಟ್ಟಿತೊಗ್ಗಿನ
ಲೊರಲಿದವು ನಿಸ್ಸಾಳ ಕಹಳೆಯ
ಬಿರುಸರದ ಬಹುವಿಧದ ವಾದ್ಯಧ್ವನಿಯ ಕಳಕಳದ
ತುರುಗಿ ತೂಳುವ ಸಿಂಧ ಸೆಳೆ ಮಡ
ಲಿರಿವ ಝಲ್ಲರಿ ಪಲ್ಲವದ ನಿಡು
ದೆರೆಯ ಧವಳಚ್ಛತ್ರ ಚಮರದೊಳೊದಗಿತತಿರಥರು ೧೩

ಮುಂಕಣಿಯಲಿಟ್ಟಣಿಸಿದರು ಭಾ
ರಂಕದಾಳುಗಳೆಂಟು ಸಾವಿರ
ಬಿಂಕದತಿರಥರೆಂಟು ಕೋಟಿ ತುರಂಗ ಪಾಯದಳ
ಶಂಕಿಸುವನೇ ಬಳಿಕ ಯದುಕುಲ
ದಂಕಕಾರನು ನಿಂದನನಿಬರಿ
ಗಂಕ ಝಂಕೆಯನೇನನೆಂಬೆನು ಸಾತ್ಯಕಿಯ ಮನದ ೧೪

ಭಾರಿಯಾಹವವಾಯ್ತಖಿಳದಳ
ಭಾರ ಬಿದ್ದುದು ಸಾತ್ಯಕಿಯ ಸುರ
ನಾರಿಯರ ತೋಳಿನಲಿ ಕಾಬುದು ನೆಲನ ರಿಣ ಹರಿದು
ಹೋರಿದರೆ ಹುರುಳಿಲ್ಲೆನುತ ಪರಿ
ವಾರವೊರಲಿತು ಪಾಂಡ್ಯ ಕೈಕೆಯ
ಕೇರಳರ ಹಿಂದಿಕ್ಕಿ ಪಡಿಬಲವಾದನಾ ಭೀಮ ೧೫

ಮುಂದೆ ಹರಿದರು ಪಾಂಡುತನಯರ
ನಂದನರು ತಾವೈವರೀತನ
ಹಿಂದುಳುಹಿ ಹಿಂಡಿದರು ಹೇರಾಳದ ಚತುರ್ಬಲವ
ಕೊಂದರಗ್ಗದ ಚಿತ್ರಸೇನನ
ಬಂದ ಹರಿಬದ ಚಿತ್ರನನು ಗುರು
ನಂದನನು ಬಳಿಕವರ ಬೆದರಿಸಿ ನೂಕಿದನು ರಥವ ೧೬

ಹೆರತೆಗೆದು ಕೆಲಸಾರಿ ಮಕ್ಕಳು
ಮರಿಗಳಿಗೆ ರಣವೇಕೆ ಪಾಂಡವ
ರುರುವ ಸಂತತಿ ನೀವಕಟ ಎನುತವರನೊಡಹಾಯ್ಸಿ
ಇರಿವ ಭಟನಹೆ ಯಾದವರ ಬಡ
ಕರುವೆ ಬಾ ಬಾ ಎಂದು ಚಿಟಿಕಿಸಿ
ಕರೆದು ಗುರುಸುತ ಸಾತ್ಯಕಿಯ ತಾಗಿದನು ನಗೆಮಾಡಿ ೧೭

ಸಾರು ನೀ ಸಾರೆಲವೊ ಭೀಮನ
ತೋರಗರುಳಿನ ದಂಡೆಯನು ಕೈ
ಯಾರೆ ಮಾರಿಗೆ ಮುಡಿಸುವೆನು ಫಡ ಭೀಮ ನಿಲ್ಲೆನುತ
ಆರಿದನು ಜಗ ನಡುಗಲಾ ಜಂ
ಭಾರಿ ಜವಗೆಡೆ ಬೊಬ್ಬಿರಿದನಾ
ಭಾರತದ ಭಾರಣೆಯಲೈದಿದನನಿಲ ನಂದನನ ೧೮

ಗುರುತನೂಜ ಕಣಾ ವಿರೋಧಿ
ಸ್ಮರಕಪರ್ದಿ ಕಣಾ ವೃಕೋದರ
ಕರಿ ಮೃಗೇಂದ್ರ ಕಣಾ ಕಣಾಳಿಯ ಕಾಯ್ದುಕೊಳ್ಳೆನುತ
ಸರಳನೆಚ್ಚನು ಸರಳನಾ ಬಳಿ
ಸರಳು ಮುಂಚಿದುದಾ ಸರಳ ಬಳಿ
ಸರಳು ಮುಂಚಿದುದಾವ ಕೈಚಳಕವೊ ಶಿವಾ ಎಂದ ೧೯

ತಿರುಗಿ ನಿಂದನು ಪವನಸುತನೆಲೆ
ಗುರುಜ ನಿನ್ನಗ್ಗಳಿಕೆಗಳ ಜಗ
ವರಿಯದೇ ಫಡ ಭಟ್ಟನಾದೈ ನಿನಗೆ ನೀನೆನುತ
ಸರಳ ಬಳಿಸರಳುಗಳನಾ ಲಘು
ತರದ ಲೆಕ್ಕದಲೆಸೆವ ವಿವರದ
ಪರಿವಿಡಿಯ ವೇಗಾಯ್ಲತನವನು ತೋರಿದನು ಭೀಮ ೨೦

ಜಾಗು ಮಝುರೇ ಭೀಮ ಬಲುಗೈ
ಲಾಗು ಮರೆಯದಲಾ ಶರೌಘ
ತ್ಯಾಗದಸ್ತ್ರ ಪ್ರವರ ಬಂಧವ ಮತ್ತೆ ನೋಡೆನುತ
ಆ ಗಗನವಿದು ಧರಣಿಯಿದು ದಿ
ಗ್ಭಾಗವೆಲ್ಲಿಯದೆಂಬ ವಿವರವ
ನಾಗಳರಿಯೆನು ದ್ರೋಣನಂದನನೆಚ್ಚನನಿಲಜನ ೨೧

ಎಲೆಲೆ ಹಾರುವನೇಕೆ ಹರಿಮೇ
ಖಳೆಯ ಕೇಳಿಕೆಯೇಕೆ ಪಡಿಮ
ದ್ದಳೆಯ ಬಡಿಕರ ಬಿಂಕ ಮೇಳವವಿಲ್ಲಲಾ ನಿನಗೆ
ಹೊಲಬುಗೆಡುವನೆ ಭೀಮನೀ ಸರ
ಳೊಳಗೆ ಹುಸಿಯೇಕೆನುತ ಬಾಣಾ
ವಳಿಯ ನಿಮಿಷಕೆ ಕಡಿದು ಗುರುಜನನೆಚ್ಚನಾ ಭೀಮ ೨೨

ರಥದ ಮೇಲಂಬುಗಳು ರಿಪು ಸಾ
ರಥಿಯ ಮೈಯಲಿ ಘಾಯ ತುರಗ
ವ್ಯಥೆಯನೇವೇಳುವೆನು ಟೆಕ್ಕೆಯವೈದೆ ಬಾಣಮಯ
ಶಿಥಿಲವಾದುವು ಗಾಲಿಗಳು ಬಳಿ
ರಥಿಕರೀತನ ಬಿಟ್ಟು ಹಾಯ್ದರು
ಪೃಥುಳಬಲನೈ ಭೀಮನೆಚ್ಚನು ಗುರುತನೂಭವನ ೨೩

ನೊಗವನೀಡಾಡಿದನು ಕುದುರೆಗ
ಳೊಗಡಿಸಲು ರಕುತವನು ಸಾರಥಿ
ಬಿಗಿದ ಹಿಳುಕುಗಳೌಕಿದವು ತೇರಿನಲಿ ಸಿಂಧದಲಿ
ಒಗುವ ನೆತ್ತರ ಸುರಿವ ಬಾಣದ
ನುಗುತೆಗಂಡಿಯ ಮೆಯ್ಯ ಭೀಮನ
ಬೆಗಡು ಮೊಳೆತುದು ಗುರುತನೂಭವನೆಚ್ಚನನಿಲಜನ ೨೪

ಈತನೆಚ್ಚನು ಮತ್ತೆ ಶರ ಸಂ
ಘಾತವೋ ಗುರುಸುತನ ತನುವೋ
ಪೂತ ಮುತ್ತವೊ ತಳಿತೆಸೆವ ಕೆಂದಾವರೆಯ ಬನವೊ
ಭೀತಿ ಬಿಗಿದುದು ದಿಟ್ಟತನದನು
ಧಾತುಗೆಟ್ಟುದು ನೋಡಿ ಕಂಗಳು
ಸೋತು ಮರಳಿದನಿತ್ತಲಶ್ವತ್ಥಾಮ ಮೈಮರೆದ ೨೫

ನನೆದ ಜಾಜಿನ ಗಿರಿಯೊ ಭೀಮನ
ತನುವೊ ಖಂಡಿತ ರಕ್ತಚಂದನ
ಬನವೊ ರಥವೋ ತಳಿತಶೋಕೆಯ ಮರನೊ ಸಾರಥಿಯೊ
ಮನ ಹಣುಗಿ ತುಟಿಯೊಣಗಿ ನೋಟದ
ಮೊನೆ ಮುರಿದು ರ್ಝೊಂಪಿಸುತ ಮುಂದಣೆ
ಗೊನೆದು ಬಿದ್ದನು ಭೀಮ ಪಾಂಡವ ಸೇನೆ ಕಳವಳಿಸೆ ೨೬

ಅಹಹ ವೈರಿಗೆ ಧರೆಗೆ ಪಾಣಿ
ಗ್ರಹಣವಾಯಿತೆ ಪಾಂಡುಸುತರಿಗೆ
ಬಹ ವಿಪತ್ತುಗಳೊಳಗಿದೊಂದೇ ಕಳಶವಾದುದಲ
ಅಹಿತರಿಗೆ ಗೆಲುವಾಯ್ತು ನಮಗಿ
ಲ್ಲಿಹುದು ಮತವಲ್ಲೆನುತ ಸಾರಥಿ
ಸಹಸಿಗನ ಸಂತೈಸಿ ತಂದನು ರಾಜಮಂದಿರಕೆ ೨೭

ತಂದೆಯುಳಿದಾ ಹೊತ್ತು ಹಗೆಯನು
ಕೊಂದು ಸಾಯದೆ ದೇಹ ಮೋಹಕೆ
ನಿಂದು ನೀ ನಿಶ್ಶಂಕನಾದೈ ವೈರಿಶರಹತಿಗೆ
ಎಂದು ಸಾರಥಿ ಶೋಕಿಸುತ ಗುರು
ನಂದನನ ಕೊಂಡೊಯ್ದನಿತ್ತಲು
ಸಂದಣಿಸಿತತಿರಥರು ಸೌಬಲ ಶಲ್ಯ ಮೊದಲಾಗಿ ೨೮

ದೊರೆಗಳಿಬ್ಬರ ಸೋಲವನು ವಿ
ಸ್ತರಿಸಿ ಹೊಕ್ಕರು ಮತ್ತೆ ಮಾದ್ರೇ
ಶ್ವರ ಶಕುನಿ ಕೃತವರ್ಮ ಕೃಪ ದುಶ್ಶಾಸನಾದಿಗಳು
ಅರಿಬಲದಲಾ ದ್ರೌಪದೇಯರು
ಹರಿಯನುಜ ಮಾದ್ರೇಯ ಕೈಕೆಯ
ವರಯುಧಾಮನ್ಯೂತ್ತಮೌಂಜಸ ಪಾಂಡ್ಯ ಶೃಂಜಯರು ೨೯

ಬಲಿದುದಾಹವ ಮತ್ತೆ ಚಾತು
ರ್ಬಲ ಭಡಾಳಿಸಿ ಕಾದುತಿರ್ದುದು
ಮುಳಿದು ಶಲ್ಯನ ಕೂಡೆ ಪಂಚದ್ರೌಪದೀಸುತರು
ಅಳವಿಗೊಟ್ಟರಿಯಕಟಕಟ ಮ
ಕ್ಕಳಿರ ನಿಮಗೇಕಿದು ಯುಧಿಷ್ಠಿರ
ಫಲುಗುಣರ ಬರಹೇಳೆನುತಲೆಚ್ಚನು ಮಹಾಸ್ತ್ರದಲಿ ೩೦

ಎಚ್ಚನಿವನಿವನೊಡನೆ ಬಾಣವ
ಕೊಚ್ಚಿದರು ಕೊಡಹಿದರು ಶರದಲಿ
ಚುಚ್ಚಿದನು ಜೀಕುಳಿಯ ಬಿಟ್ಟನು ನೆತ್ತರನು ನೆಲಕೆ
ಬೆಚ್ಚಿದವು ರಥವಾಜಿ ಹತ್ತಿಗೆ
ಬಿಚ್ಚಿ ರಥ ನುಗ್ಗಾಯ್ತು ಶೌರ್ಯದ
ಕೆಚ್ಚು ಮುರಿದುದು ಹಿಂಗಿದರು ಪಾಂಡವಕುಮಾರಕರು ೩೧

ನಾಲ್ಕನೆಯ ಸಂಧಿ

ಸೂ. ರಾಯದಳ ಮಝು ಪೂತುರೆನೆ ರಿಪು
ರಾಯ ಸೇನೆಯ ಮುರಿದು ಪಾಂಡವ
ರಾಯ ಧರ್ಮಕುಮಾರ ಗೆಲಿದನು ಕೌರವೇಶ್ವರನ

ಫಡ ಫಡೆಲವೋ ಶಲ್ಯ ಮಕ್ಕಳ
ಬಡಿದು ಬೆರೆದೈ ಬಾಹುಬಲದಲಿ
ತೊಡರು ನಿನಗೆಡಗಾಲಲಿದೆಯೆನುತೊದೆದು ನಿಜರಥವ
ಘುಡುಘುಡಿಸಿ ರೋಮಾಂಚನದ ಹೊರ
ಗುಡಿಯು ಸೊಂಪಿನ ಮೈಯ್ಯ ಕಡುಗಲಿ
ತಡೆದನೇಕಾಂಗದಲಿ ಸಾತ್ಯಕಿ ಶಲ್ಯ ಭೂಪತಿಯ ೧

ಬಾಯಿ ಬಡಿಕರು ಯಾದವರು ಗರು
ವಾಯಿ ನಿನಗೆಲ್ಲಿಯದು ಸುಭಟರಿ
ಗಾಯುಧದ ಸಿಂಗಾರವೋ ಮೇಣ್ ಕಾಲ ನೇವುರವೊ
ಸಾಯಕವ ಹಿಡಿ ಸಾಕು ಸೋಲದ
ತಾಯಿಮನೆ ನಿನಗಿದಿರಲಿದೆ ನಿ
ನ್ನಾಯತವ ತಾನರಿಯೆನೆನುತೋರಂತೆ ತೆಗೆದೆಚ್ಚ ೨

ಎಲವೊ ಮಾದ್ರಾಬಾಹಿರನೆ ಬಿಡು
ಗಳಹತನವೇ ನಮ್ಮೊಡನೆ ತೊ
ಟ್ಟಳುಕೆ ಗರಿನಾಲಗೆಯ ಕೊಯ್ವೆನು ಮಾಣು ಮಾಣೆನುತ
ಬಿಲುದಿರುವನುಗುಳಿಸಿದನಂಬಿನ
ಬೆಳಸನಾರಳವಡಿಸುವರು ದಿಗು
ವಳೆಯ ನೆರೆಯುದಿದೆತ್ತಣದು ಬಿಲುಗಾರತನವೆಂದ ೩

ಬಾಯಿಬಡಿಕರು ನಾವು ನೀ ಗರು
ವಾಯಿಕಾರನು ಬಯ್ವ ಬಿರುದಿನ
ಬಾಯ ನೋಡಾಯೆನುತ ತೋಟಿಗೆ ತೆರಹುಗೊಡದೆಸಲು
ಸಾಯಕದ ಹೊದೆ ಹಲವು ಶಲ್ಯಗೆ
ಬೀಯವಾದವು ಬಳಿಕ ಕೌರವ
ರಾಯನನುಜನು ತರುಬಿ ನಿಂದನು ಸಾತ್ಯಕಿಯ ರಥವ ೪

ಹಳಚಿದವು ರಥವೆರಡು ಬಲುಗೈ
ಗಳಿಗೆ ಬಲಿದುದು ಬವರ ಕೌರವ
ಬಲದ ಭಟರಲಿ ಹತ್ತು ಸಾವಿರ ರಥಿಕರನುವಾಯ್ತು
ಒಳಹೊಗಿಸಿ ಸಾತ್ಯಕಿಯ ಸಿಕ್ಕಿಸಿ
ಗೆಲುವ ತವಕವ ಕಂಡು ಕೆಣಕಿದ
ರಳವಿಯಲಿ ಸಹದೇವ ನಕುಳರು ಕೌರವಾನುಜನ ೫

ತೆಗಸಿದನು ಸಾತ್ಯಕಿಯನೀತನ
ಬಿಗಿದನಂಬಿನಲವನ ಬಾಣಾ
ಳಿಗಳ ಕಡಿದನು ಘಾಸಿಮಾಡಿದನವನ ರಥಹಯವ
ಜಗುಳಿದನು ಕಲಿನಕುಲ ರಥ ವಾ
ಜಿಗಳ ಜೋಡಣೆ ಬಿಚ್ಚಿ ರಕುತವ
ನೊಗಡಿಸಲು ಸಹದೇವನೆಚ್ಚನು ನಿನ್ನ ನಂದನನ ೬

ಸರಳ ಸೈರಿಸಿ ನಿನ್ನ ಮಗನ
ಬ್ಬರಿಸಿ ಮಾದ್ರೀಸುತನನೆಚ್ಚನು
ತರಹರಿಸಿ ಮಗುಳೆಚ್ಚನಾತನು ಕೌರವಾನುಜನ
ಮರುಳೆ ನೀನೇನಹೆ ಮಹಾ ಸಂ
ಗರಕೆ ಕಳುಹಾ ನಿನ್ನವರನೆನು
ತುರವನೆಚ್ಚನು ಜರಿಯೆ ಜೋಡಿನ ಚಿಪ್ಪು ದೆಸೆದೆಸೆಗೆ ೭

ನೋವನೇ ನೊಣವೂರಿದರೆ ಸಹ
ದೇವನೆಲವೋ ನಿನ್ನ ಕೊಂದಡೆ
ಪಾವಮಾನಿಗೆ ಪಂಥ ತಪ್ಪುವುದೆನುತ ಖಾತಿಯಲಿ
ತಾವಕನ ಸಾರಥಿಯ ರಥ ತುರ
ಗಾವಳಿಯನಾಯುಧವ ಖಂಡಿಸೆ
ಜೀವಗಳ್ಳರ ದೇವ ಪಸರಿಸಿದನು ಪಲಾಯನವ ೮

ರಾಯನನುಜನ ಹರಿಬದಲಿ ರಾ
ಧೇಯ ಹೊಕ್ಕನು ಸ್ವಾಮಿದ್ರೋಹರ
ಕಾಯಿದರೆ ಕೈಕೊಳ್ಳದೌಷಧವಾವುದಿವದಿರಿಗೆ
ನೋಯಿಸುವೆನೊಮ್ಮೆನುತ ತಿರುವಿನ
ಸಾಯಕದ ಕಿವಿಗಡಿಯ ತೆರಹಿನ
ರಾಯ ದಳಪತಿ ತರುಬಿದನು ಮಾದ್ರೀಸುತನ ರಥವ ೯

ಸಾರು ನೀ ಸಹದೇವ ಜಗದ ವಿ
ಕಾರಿಯಿವನೀ ಕರ್ಣನಿವನ ದೊ
ಠಾರಿಸುವ ನಾಲಗೆಯ ಕೊಯ್ಲಿಗೆ ಶಸ್ತ್ರವಿವೆಯೆನುತ
ಸಾರಥಿಯ ಬೋಳೈಸಿ ಚಾಪದ
ನಾರಿಯನು ದನಿಮಾಡಿ ನಕುಲನು
ದಾರ ಕರ್ಣನ ಮುಟ್ಟಿ ಬಂದನು ಚಾಚಿದನು ರಥವ ೧೦

ಆರಿವರು ನಕುಳಾಂಕರೇ ಜ
ಜ್ಝಾರತನವೇ ನಮ್ಮೊಡನೆ ನೀ
ವಾರು ಪಾಂಡುಕುಮಾರರೋ ಮಾದ್ರೀಕುಮಾರಕರೊ
ಭಾರಿಯಾಹವದೆಡೆಗೆ ನಿಮ್ಮನಿ
ದಾರು ಬಿಟ್ಟರುಪಾಯದಲಿ ನಿಮ
ಗಾರು ಮುನಿದರು ಶಿವ ಶಿವೆಂದನು ಕರ್ಣ ನಸುನಗುತ ೧೧

ತೊಲತೊಲಗು ತರುವಲಿಗೆ ರಣವಿದು
ಸುಲಭವೇ ಲೋಕೈಕವೀರರು
ಹಲಬರಿದರೊಳು ಹೊಕ್ಕು ಹೊದಕುಳಿಗೊಂಡು ಹೋದರಲೆ
ಗೆಲುವ ನಂಬುಗೆ ನಿನ್ನ ತಂದುದು
ಕೊಲೆಗೆ ನೋಡಾದರೆಯೆನುತ ಕೈ
ಚಳಕದಲಿ ಮುಸುಕಿದನು ಮೊನೆಗಣೆಯಿಂದ ರಿಪುಭಟನ ೧೨

ಬಿಗಿದ ಬಾಣದ ದಡ್ಡಿಯನು ತಳ
ಮಗುಚಿದನು ನೂರಂಬಿನಲಿ ಹೇ
ಳಿಗೆಯ ಮುಚ್ಚಳ ತೆಗೆದ ಹಾವಿನವೋಲು ರೆಂಛೊಂಪಿಸುತ
ಹೊಗರನುಗುಳುವ ಹೊಸ ಮಸೆಯ ಕೋ
ಲುಗಳ ಕವಿಸಿದನಾತನಂಬಿನ
ಝುಗೆಯ ಝುಳದಲಿ ಮುಳುಗಿ ಮೋನದೊಳಿರ್ದನಾ ಕರ್ಣ ೧೩

ಆಳು ನೀನಹುದೆಲವೊ ಕರ್ಣ ವಿ
ಶಾಲಮತಿ ನೀ ಲೇಸು ಮಾಡಿದೆ
ಬಾಲರಾದಡೆ ಭಂಗವೇ ಜಾವಳನೆ ಅಭಿಮನ್ಯು
ಕೋಲ ಸೈರಿಸು ಸೈರಿಸಾದಡೆ
ಭಾಳಲಿಪಿ ಸಂಕರುಷ ವಿಪುಳ ಶ
ರಾಳಿಯಿವೆ ಕೊಳ್ಳೆನುತ ನಕುಳನನೆಚ್ಚನಾ ಕರ್ಣ ೧೪

ತಾಗಿದವು ನಾಲ್ಕಂಬು ದೇಹದ
ಬೇಗಡೆಯಲೆಂಟಂಬು ನುಸುಳಿದ
ವಾಗ ಹದಿನಾರಂಬು ಹರಿದವು ಮತ್ತೆ ಬಳಿಸಲಿಸಿ
ಸೂಗುರಿಸಿ ಝೊಮ್ಮಿನಲಿ ಮುಂದಕೆ
ಬಾಗಿ ಬಿದ್ದನು ಸಾರಥಿಯ ಕೈ
ಲಾಗಿನಲಿ ತಿರುಗಿದನು ನಕುಳನು ರಾಜ ಮೋಹರಕೆ ೧೫

ಹರಿಬದಾಹವವೆನಗೆ ತನಗೆಂ
ದುರವಣಿಸಿದರು ಚೇಕಿತಾನಕ
ದುರುಳ ಧೃಷ್ಟದ್ಯುಮ್ನ ಪಾಂಡ್ಯ ಶಿಖಂಡಿ ಶೃಂಜಯರು
ಬರಲಿ ಬರಲೀ ಹೊಟ್ಟ ತೂರುವ
ಡರಸು ಮೋಹರವೇಕೆ ಸಾಕೆಂ
ದರಿಭಟರು ತರುಬಿದರು ಕೃಪ ಕೃತವರ್ಮ ಸೌಬಲರು ೧೬

ದಳಪತಿಯ ಹಿಂದಿಕ್ಕಿ ಪಾಂಡವ
ಬಲ ಮಹಾರಥರುರವಣಿಸಿ ಮೂ
ದಲಿಸಿ ನಿಂದರು ಕೊಂದರಿದಿರೇರುವ ಚತುರ್ಬಲವ
ಕೊಲೆಗೆ ಬೇಸರರಿವರು ಸಾವುದ
ಕಳುಕದವದಿರು ಹೇಳುವಡೆ ನಾ
ವಲಸಿದೆವು ಧೃತರಾಷ್ಟ್ರ ಎಂದನು ಸಂಜಯನು ನೃಪನ ೧೭

ವಿರಥರಾದ ಶಿಖಂಡಿ ಮೊದಲಾ
ದರಿಭಟರು ಜಾರಿದರು ಸುಭಟರ
ನೊರಸಿ ಕೊಂದೇರಿದರು ಕೆದರಿದರವರು ರಿಪುಬಲವ
ದೊರೆಗೆ ಹತ್ತಿರೆಯಾಯ್ತು ಕಾಳೆಗ
ವರಿದೆನಲು ನಿಸ್ಸಾಳಕೋಟಿಯ
ಧರದುರದ ದೆಖ್ಖಾಳದಲಿ ತಲೆದೋರಿದನು ಪಾರ್ಥ ೧೮

ಭಟರ ತೆಗೆತೆಗೆ ಪಾರ್ಥನೋ ರಿಪು
ಕಟಕ ಭೈರವನೋ ವೃಥಾ ಸಂ
ಕಟದ ಸನ್ನಾಹದಲಿ ಸುಭಟರ ಮಾರಬೇಡೆನುತ
ಲಟಕಟಿಸಿ ಬಲವೊದರಲಪ್ರತಿ
ಭಟರು ಬಳಿಕನುವಾಯ್ತು ವಿಜಯೋ
ತ್ಕಟದಲಿಪ್ಪತ್ತೈದು ಸಾವಿರ ವರ ಮಹಾರಥರ ೧೯

ನೂಕಿದರು ಸಂಶಪ್ತಕರು ಬಲ
ದಾಕೆವಾಳರ ತೆಗಸಿ ಬಹಳೋ
ದ್ರೇಕ ಸಾಹಸರೊದಗಿದರು ಕಂಪಿತ ಕುಳಾಚಳರು
ತೋಕಿದರು ಶರವಳೆಯಲರ್ಜುನ
ಸಾಕು ಸಾರೈ ನಿನ್ನ ಜೊತ್ತಿನ
ಜೋಕೆಯಾಹವವಲ್ಲೆನುತ ತೆಗೆದೆಚ್ಚರಿದಿರಾಗಿ ೨೦

ಆರಿದಿಪ್ಪತ್ತೈದು ಸಾವಿರ
ತೇರು ಸರಿಸದಲೊಂದು ವಾಘೆಯ
ಲೇರಿದವು ನಿಪ್ಪಸರದಲಿ ನಿಲುವಾತನಾರಿದಕೆ
ಸಾರಿಗೆಗೆ ಸಾರಿಗೆಗೆ ಬಾಣಾ
ಸಾವಿರವಿಪ್ಪತ್ತೈದು ಸಾವಿರ
ವಾರು ಸೈರಿಸಿ ನಿಲುವರೆನುತಿದ್ದುದು ಸುರಸ್ತೋಮ ೨೧

ಸುರಿದುದತಿವಳೆಯೆಂದು ಕುಲಗಿರಿ
ಕರಗುವುದೆ ಮೇಗರೆಯ ಶಿಲೆಯಿ
ಬ್ಬೆರಳು ನೆನೆವುದೆ ನಾಡ ಹಂತಿಯಲಳುಕುವರ್ಜುನನೆ
ಅರಿ ಮಹಾರಥರನಿಬರೈಸರ
ಸರಳು ಸಂಖ್ಯಾತೀತವದರೊಂ
ದುರವಣೆಗೆ ಪೈಸರಿಸಿತಿಲ್ಲವನೀಶ ಕೇಳೆಂದ ೨೨

ಅವರ ಶರಸಂಘಾತವನು ಕಡಿ
ದವರ ಸಾರಥಿಗಳನು ರಥವಾ
ಹವನು ಧನುವನು ಸಿಂಧವನು ಸೀಗುರಿಯ ಝಲ್ಲರಿಯ
ಅವರ ಪದಕ ಕಿರೀಟ ಕಂಕಣ
ವಿವಿಧ ಕರ್ಣಾಭರಣ ಕೇಯೂ
ರವನು ಕಡಿಕಡಿದೊಟ್ಟಿದನು ಕಲಿಪಾರ್ಥ ನಿಮಿಷದಲಿ ೨೩

ಘಾಯವಡೆದರು ಘಾಸಿಯಾದರು
ಬಾಯಲೊಕ್ಕುದು ಕರುಳು ಮಕ್ಕಳು
ತಾಯಿಗಾಗದೆ ಕೆಟ್ಟರೆಂಬುದ ಕಾಣಲಾಯ್ತಿಲ್ಲಿ
ನಾಯಕರು ಹಲರುಳಿದುದಧಿಕರು
ಹಾಯಿದರು ಹೂಣಿಗರು ಹರಿಹಂ
ಚಾಯಿತಿಪ್ಪತ್ತೈದುಸಾವಿರ ವರ ಮಹಾರಥರು ೨೪

ಎಲೆಲೆ ಸಂಶಪ್ತಕರ ಭಾರಿಯ
ಬಲ ಮುರಿದು ಬರುತಿದೆ ವಿಘಾತಿಗೆ
ನಿಲುವರಿಲ್ಲಾ ಸೂರೆವೋಯಿತು ರಾಯನಭಿಮಾನ
ಜಲಧಿ ಬರತುದು ರಾಜ್ಯಕಾರ್ಯಕೆ
ನಿಲುವಡಿದು ಹೊತ್ತೆನುತ ಮಂತ್ರಿಗ
ಳುಲಿಯೆ ಕೌರವರಾಯ ಕಂಡನು ಪಾರ್ಥನುರವಣೆಯ ೨೫

ಕರವ ನೆಗಹಿದನಕಟ ಹೋಹೋ
ಬಿರುದರಂಜದಿರಂಜದಿರಿ ನಿ
ಮ್ಮರಿಭಟಗೆ ನಾಲ್ಕಿಲ್ಲ ಕೈಕಣ್ಣಿಲ್ಲ ನೊಸಲಿನಲಿ
ದೊರೆಯ ಕೈಯನು ಕಂಡ ಬಳಿಕೋ
ಸರಿಸಿರೈ ಪರಿವಾರ ದೂರದ
ಲಿರಿ ವೃಥಾ ಭಯವೇಕೆನುತ ಕುರುರಾಯನನುವಾದ ೨೬

ಕೂಡೆ ಗರಿಗಟ್ಟಿತು ಚತುರ್ಬಲ
ಜೋಡು ಮಾಡಿತು ರಾಯನಿದಿರಲಿ
ಹೇಡಿ ಕಲಿಯುಹರೆಂಬರಿವದಿರು ಹೇಮಮಾರಿಗಳೆ
ಜಾಡಿಸುವ ಝಲ್ಲರಿಯ ಮೋರೆಗೆ
ನೀಡಿ ಮರಳುವ ಸೀಗುರಿಯ ದಳ
ವೇಡಿಸಿತು ಕಲ್ಪಾಂತ ರಂಜಿತ ಮೇಘಡಂಬರವ ೨೭

ಸರಕಟಿಸಿ ದಳ ಸರ್ವಲಗ್ಗೆಯ
ಲುರವಣಿಸೆ ಯಮಸೂನು ಕಂಡನು
ನರನ ತೆಗೆತೆಗೆ ಇಂದಿನಾಹವ ನಮ್ಮ ಮೇಲೆನುತ
ಅರಸ ನಡೆದನು ರಾಜ ಮೋಹರ
ಹೊರಳಿಗಟ್ಟಿತು ಪ್ರಳಯ ಸಮರ
ಸ್ಫುರಿತ ಬಹಳಾರ್ಣವದ ಲಹರಿಯ ಲಳಿಯ ಲಗ್ಗೆಯಲಿ ೨೮

ಎರಡು ದಳ ಗಂಟಿಕ್ಕಿದುದು ನೆಲ
ಬಿರಿಯೆ ಬೆರಸಿತು ಹೊಯ್ದುರುರುಳುವ
ಶಿರದ ಬೀಳುವ ಭಟರ ಮೆದೆಗೆಡೆವಾನೆ ಕುದುರೆಗಳ
ಪರಿವಿಡಿಯದಂತಿರಲಿ ದೊರೆದೊರೆ
ಯುರವಣಿಸಿ ಹಳಚಿದರು ಪಾಂಡವ
ರರಸ ಕೌರವರರಸರೆಚ್ಚಾಡಿದರು ಮೊದಲಿಸಿ ೨೯

ಅರಸರಿವರೇ ಶಿವಶಿವಾ ನಿ
ಷ್ಕರುಣರೈ ನೀವೆಮ್ಮವೊಲು ಮೊನೆ
ಸರಳು ಮಾನ್ಯರನರಿವವೇ ನೀವೇಕೆ ರಣವೇಕೆ
ಒರಟರರ್ಜುನ ಭೀಮರತಿ ನಿ
ಷ್ಠುರರು ನಾವಡಿಮೇಲಹೆವು ನೀವ್
ಮರಳಿ ಬಿಜಯಂಗೈವುದೆಂದನು ಕೌರವರರಾಯ ೩೦

ಕೋಲ ಬಲುಹುಂಟಾಗೆ ನಾಲಗೆ
ಹೋಲ ನುಡಿಯದು ಹೊಲ್ಲದೇನಿದು
ಖೂಳ ಕಟಕಿಯ ಮಾತು ಬೇಡಂಬಿನಲಿ ಮಾತಾಡು
ಆಳುತನಕಾಭರಣವೇ ಮಾ
ತಾಳಿತನ ಕೈದೋರದಹಿತನ
ಮೇಲಣೇರಿನ ಬಾಯ ಸುಭಟರ ಹೊಗಳಬೇಡೆಂದ ೩೧

ಖರೆಯರಲ್ಲಾ ನೀವು ಕೊಂತಿಯ
ವರ ಕುಮಾರರು ನಿಮ್ಮೊಡನೆ ಸಂ
ಗರಕೆ ಸರಿಸರೆ ನಾವು ಸಂತೈಸಾದಡೆಂದೆಸಲು
ಸರಳು ಗಗನವ ಹೊದಿಸಿದವು ಹೂಂ
ಕರಿಸಿದವು ಹರೆಗಡಿದವರಿಮೋ
ಹರವ ಮುರಿದವು ಮುಸುಕಿದವು ಮೋದಿದವು ರಿಪುಭಟರ ೩೨

ಎಚ್ಚನೆಂಟಂಬಿನಲಿ ಕೌರವ
ನೆಚ್ಚ ಬಾಣವ ಕಡಿದು ನೂರರ
ಲೆಚ್ಚನೀತನ ರಥವನದ ಪರಿಹರಿಸಿ ಕುರುರಾಯ
ಎಚ್ಚನರಸನನಾ ಶರವ ಕಡಿ
ದೆಚ್ಚನವನಿಪನುಭಯರಾಯರ
ನಿಚ್ಚಟಕೆ ಮಝಪೂತುರೆಂದುದು ಮೇಲೆ ಸುರಕಟಕ ೩೩

ದ್ಯುಮಣಿ ಪಡುವಣ ಕಡಲ ಸಾರುವ
ಸಮಯವಾಯಿತ್ತುಭಯರಾಯರ
ಸಮರ ಸೌರಂಭಾತಿಶಯವಿಮ್ಮಡಿಸಿತಡಿಗಡಿಗೆ
ಅಮಿತ ರೋಷ ವಿಧೂತ ಪಾಣಿ
ಭ್ರಮಿತ ಶರತತಿ ವಿಸ್ಫುಲಿಂಗ
ಭ್ರಮಿತ ಭುವನತ್ರಯರು ಕಾದಿದರರಸ ಕೇಳೆಂದ ೩೪

ಗೆಲವು ನಮಗಾಯ್ತೆಂದು ಕೌರವ
ರುಲಿದರೆಮಗಗ್ಗಳಿಕೆಯೆಂದವ
ರುಲಿವುತಿರ್ದರು ಕಾದಿದರು ಸಮಜೋಳಿ ಜೋಕೆಯಲಿ
ಬಳಿಕ ಯಮನಂದನನ ಕೈ ವೆ
ಗ್ಗಳಿಸಿ ತಾಗಿತು ನಿನ್ನ ತನುಜನ
ಬಿಲು ಸರಳು ರಥ ಸೂತ ವಾಜಿಗಳೊರಗಿದವು ಧರೆಗೆ ೩೫

ಸೆಳೆದು ಪಿರಿಯುಬ್ಬಣವನವನಿಪ
ಕೆಲಕೆ ಚಿಗಿದನು ಹಾ ಮಹಾದೇ
ವೆಲೆಲೆ ದೊರೆ ದೊರೆ ಹಗೆಗೆ ಸಿಕ್ಕಿದನೆನುತ ಬಲ ಬೆದರೆ
ಬಿಲುದುಡುಕಿ ಕೃತವರ್ಮ ಕೃಪ ಸೌ
ಬಲ ಕೃಪಾನುಜ ಶಲ್ಯ ಗುರುಸುತ
ದಳಪತಿಗಳೇರಿದರು ರಾಯನ ಸುತ್ತುವಳಯದಲಿ ೩೬

ದೊರೆಗೆ ಬಿದ್ದುದು ಭಾರಿಯಾಹವ
ವರರೆ ಬರಹೇಳೆನುತ ಕವಿದುದು
ಸರಳ ಹೊದೆಗಳ ಕೆದರಿ ಸಾತ್ಯಕಿ ಭೀಮ ಕೈಕೆಯರು
ಬಿರುದ ಧೃಷ್ಟದ್ಯುಮ್ನ ಮಾದ್ರೇ
ಯರು ಶಿಖಂಡಿ ಯುಯುತ್ಸು ಸೃಂಜಯ
ತರಳ ಪಂಚದ್ರೌಪದೇಯರು ಮುತ್ತಿದರು ನೃಪನ ೩೭

ಬಳಿಕ ಸಂಕುಳ ಸಮರವತಿ ವೆ
ಗ್ಗಳಿಸಿತದನೇನೆಂಬೆನಂಬುಧಿ
ಗಿಳಿದನಂಬುಜಮಿತ್ರ ಬೆನ್ನಲಿ ತಿಮಿರ ಬಳಿಸಲಿಸೆ
ಗೆಲಿದು ಹೋಗದಿರೆಂದು ಕೌರವ
ನಳವಿಗೊಟ್ಟನು ಮತ್ತೆ ಧರ್ಮಜ
ಬಿಲುದಿರುವ ನೇವರಿಸಿ ನಿಂದನು ಸಮರಕನುವಾಗಿ ೩೮

ರಾಯರಿಬ್ಬರ ಮನದ ತಿಮಿರದ
ತಾಯಿಮನೆಯೆಂಬವೊಲು ತಾ ಪೂ
ರಾಯದಲಿ ನುಂಗಿದುದು ಕತ್ತಲೆ ನಿಮಿಷದಲಿ ಜಗವ
ರಾಯ ಮೋಹರ ತೆಗೆದವೆರಡು ವಿ
ಡಾಯಿಯಲಿ ಬಹುವಿಧದ ವಾದ್ಯ ನ
ವಾಯಿ ಮಿಗೆ ನಲವಿನಲಿ ಬಂದರು ಪಾಳೆಯಂಗಳಿಗೆ ೩೯

ಐದನೆಯ ಸಂಧಿ

ಸೂ. ವೈರಿ ವಿಜಯಕೆ ತ್ರಿಪುರ ದಹನದ
ಚಾರು ಕಥನವನರುಹಿ ಶಲ್ಯನ
ಸಾರಥಿಯ ಮಾಡಿದನು ಕರ್ಣಗೆ ಕೌರವರರಾಯ

ಕೇಳು ಜನಮೇಜಯ ಧರಿತ್ರೀ
ಪಾಲ ದಿನವೊಂದಾಯ್ತು ಕರ್ಣನ
ಕಾಳೆಗದೊಳಲ್ಲಿಂದ ಮೇಲಣ ವರ ಕಥಾಮೃತವ
ಕೇಳಲಿಚ್ಛೈಸಿದ ಗತಾಕ್ಷ ನೃ
ಪಾಲಕಗೆ ವಿಸ್ತರಿಸಿ ಸಂಜಯ
ಹೇಳಿದನು ಬಳಿಕೆರಡನೆಯ ದಿವಸದ ರಣೋತ್ಸವವ ೧

ಹೊಗಳಿ ಕೆಲವರ ಹೊಳ್ಳುಗಳೆವುತ
ನಗುತ ಕೆಲವರನವರ ಮೋಹರ
ತೆಗೆದು ಹೋಯಿತು ಬಂದುದಿದು ತಂತಮ್ಮ ಪಾಳಯಕೆ
ಹೊಗಳುಭಟ್ಟರ ಸಾಲ ಕೈದೀ
ವಿಗೆಯ ಕಹಳಾರವದ ಲಗ್ಗೆಯ
ಬಿಗುಹಿನಲಿ ಕುರುರಾಯ ಬಂದನು ರಾಜಮಂದಿರಕೆ ೨

ಗುಳವನಿಳುಹಿದವಾನೆಗಳು ಹ
ಲ್ಲಳವ ಬಿಡೆ ಭುಲ್ಲೈಸಿದವು ಹಯ
ಕುಳ ವರೂಥವನಿಳಿದು ಸೂತರು ನಿಲಿಸಿದರು ರಥವ
ಕಳಚಿ ಸೀಸಕ ಜೋಡು ಕೈದುವ
ನಿಳುಹಿ ಸಮರ ಶ್ರಮವ ನಿಮಿಷಕೆ
ನಿಳಯ ವೇದಿಯಲಿದ್ದು ಕಳೆದುದು ಕೂಡೆ ಪರಿವಾರ ೩

ಘಾಯವಡೆದಾನೆಗಳು ಗುಳವನು
ಹಾಯಿಕಲು ನೆಲಕುರುಳಿದವು ವಾ
ನಾಯುಜಂಗಳು ಬಿಗುಹ ಬಿಡೆ ದೊಪ್ಪೆಂದವಾಚೆಯಲಿ
ಘಾಯದಲಿ ಮುರಿದಂಬನುಗುಳಿದು
ಸಾಯದಿಹರೇ ಭಟರು ಗಜ ಹಯ
ಲಾಯ ಹತ್ತೊಂದಾಗಿ ಹೆಚ್ಚಿತು ಕೌರವೇಶ್ವರನ ೪

ಬಂದುದಿರುಳೋಲಗಕೆ ರಾಯನ
ಮಂದಿ ದಳಪತಿ ಶಕುನಿ ಕೃಪ ಗುರು
ನಂದನಾದಿ ಪ್ರತತಿ ಸಚಿವ ಪಸಾಯಿತರು ಸಹಿತ
ಇಂದಿನಾಹವದೊಳಗೆ ಕುಂತೀ
ನಂದನರ ಬೊಬ್ಬಾಟ ಬಲುಹಾ
ಯ್ತೆಂದು ಮೆಲ್ಲನೆ ಮಾತ ತೆಗೆದನು ಕೌರವರ ರಾಯ ೫

ಬಲುಹಲೇ ಬಳಿಕೇನು ಹಗೆಯು
ಗ್ಗಳಿಕೆ ಮೆರೆಯದೆ ಮುರವಿರೋಧಿಯ
ಬಲುಹ ಹೇಳಾ ಪಾರ್ಥನೆಂಬವನಾವ ಮಾನಿಸನು
ಬಲುಹು ಸಾರಥಿಯಿಂದ ರಿಪುಗಳ
ಗೆಲವು ಸಾರಥಿಯಿಂದ ಸಾರಥಿ
ಯೊಲಿದಡೇನೇನಾಗದೆಂದನು ಭೂಪತಿಗೆ ಕರ್ಣ ೬

ಭಾರಿ ಧನುವಿದ್ದೇನು ತೋಳಿನ
ತೋರದಲಿ ಫಲವೇನು ಕೈದುಗ
ಳಾರನಂಜಿಸಲಾಪವಾಹವರಂಗ ಮಧ್ಯದಲಿ
ಸಾರಥಿಯ ಬಲುಹಿಲ್ಲದಿರ್ದಡೆ
ಭೂರಿ ಸಾಧನವಿವು ನಿರರ್ಥಕ
ವಾರಿಗುಸುರುವೆ ತನ್ನ ಕೊರತೆಯುನೆಂದನಾ ಕರ್ಣ ೭

ತೃಣಕೆ ಕೊಂಬೆನೆ ಫಲುಗುಣನ ಕಣೆ
ಗಿಣೆಯನಾ ಸಾರಥಿಯ ಕೈ ವೈ
ಗುಣವಲೇ ಗರುವಾಯಿಗೆಡಿಸಿತು ನಮ್ಮ ಮೋಹರವ
ರಣದೊಳೆನಗತಿಶಯದ ಸಾರಥಿ
ಮಣಿದನಾದಡೆ ನಾಳೆ ಹೆಣದೌ
ತಣದಲುಣ ಬಡಿಸುವೆನು ಜಂಬುಕ ಕಾಕ ಸಂತತಿಗೆ ೮

ಲೇಸನಾಡಿದೆ ಕರ್ಣ ನಿನಗಿ
ನ್ನೈಸಲೇ ಸಾರಥಿಯ ಕೊರತೆ ಸು
ರಾಸುರರ ಥಟ್ಟಿನಲಿ ತೊಡಕುವರಾರು ನಿನ್ನೊಡನೆ
ಈ ಸಮಸ್ತ ನೃಪಾಲ ವರ್ಗದೊ
ಳಾಸೆ ಯಾರಲಿ ಸೂತ ಕರ್ಮಾ
ಭ್ಯಾಸಿಯನು ಜೋಡಿಸುವೆನೆಂದನು ಕೌರವರ ರಾಯ ೯

ಹಲವು ಮಾತೇನರಸ ನುಡಿದುದು
ಫಲಿಸಲರಿಯದು ದೈವಗತಿಯಲಿ
ಫಲಿಸಿತಾದಡೆ ರಾಜ್ಯಲಕ್ಷ್ಮಿಗೆ ಸೂಳೆತನವಹುದೆ
ಸುಲಭವಾದಡೆ ಮಾದ್ರರಾಜನ
ತಿಳುಹಿ ಸೈರಿಸು ರಿಪುಗಳೈವರ
ತಲೆಗೆ ಹಾಯಿಕು ಸಂಚಕಾರವನೆಂದನಾ ಕರ್ಣ ೧೦

ಉಬ್ಬಿದನು ರೋಮಾಂಚ ಮೆಯ್ಯಲಿ
ಹಬ್ಬಿದುದು ಹೊರೆಯೇರಿ ಮುರವೆಯ
ಮುಬ್ಬು ಕವಿದುದು ಕರ್ಣನಾಡಿದ ಮಾತ ಸವಿಸವಿದು
ಟೆಬ್ಬರಿಸುವಿಂದ್ರಿಯ ತುರಂಗದ
ಕಬ್ಬಿ ಕಳಚಿತು ಕೌರವೇಂದ್ರನು
ಸರ್ಬಲಗ್ಗಿಯ ಹರುಷದಲಿ ಹೊರವಂಟನರಮನೆಯ ೧೧

ಹರಿದರರಸಾಳುಗಳು ರಾಯನ
ಬರವನೀತಂಗರುಹಿದರು ಕಡು
ಹರುಷದಲಿ ಕಲಿ ಶಲ್ಯ ಹೊರವಂಟನು ನಿಜಾಲಯವ
ಅರಸುಮಕ್ಕಳ ವಜ್ರಮಣಿಯಾ
ಭರಣ ಕಿರಣಸ್ತೋಮ ದೀಪ
ಸ್ಫುರಿತ ಜನಮಧ್ಯದಲಿ ಕಂಡನು ಕೌರವೇಶ್ವರನ ೧೨

ಅಂದಣವನಿಳಿದರಸನಾತಗೆ
ವಂದಿಸಿದನಾ ಮಾದ್ರಪತಿ ಸಾ
ನಂದದಲಿ ತೆಗೆದಪ್ಪಿ ತಂದನು ರಾಜಮಂದಿರಕೆ
ಇಂದಿದೇನಿದ್ದಿದ್ದು ನೀನೇ
ಬಂದ ಕಾರ್ಯ ವಿಶೇಷವೇನುಂ
ಟೆಂದು ಕೌರವರಾಯನನು ಬೆಸಗೊಂಡನಾ ಶಲ್ಯ ೧೩

ಏನ ಹೇಳುವೆ ನಮ್ಮ ಪುಣ್ಯದ
ಹಾನಿಯನು ನುಗ್ಗಾಯ್ತು ಬಲ ಸಂ
ಮ್ಮಾನ ಬೀತುದು ಬಿರುದರಿಗೆ ಕಾಲೂರಿತಪಮಾನ
ಜೈನ ದೀಕ್ಷೆಯ ಹಿಡಿದುದೆನ್ನ ಸ
ಮಾನ ಸುಭಟರು ಜಯಸಿರಿಯ ಸಂ
ಧಾನ ಮುರಿದುದು ಮಾವ ನಿಮಗಜ್ಞಾತವೇನೆಂದ ೧೪

ಸಮರಜಯ ಸಾಧಕರು ಮಂತ್ರ
ಭ್ರಮಿತರಾಯ್ತುಪಜಯವಧೂ ವಿ
ಭ್ರಮ ಕಟಾಕ್ಷದ ಛಾಯದಲಿ ಕಳವಳಿಸದವರಾರು
ಸಮತೆಯಾಯಿತು ತವಕಿಗಳಿಗು
ದ್ಭ್ರಮಿಗಳಿಗೆ ತಿಳಿವಾಯ್ತು ವಾಸಿಯ
ಮಮತೆಯವರು ವಿರಕ್ತರಾದರು ಮಾವ ಕೇಳೆಂದ ೧೫

ಮುರಿವಡೆದು ಕಲಿ ಭೀಷ್ಮನೇ ಕು
ಕ್ಕರಿಸಿದನು ದ್ರೋಣಂಗೆ ಬಂದುದ
ನರುಹಲೇತಕೆ ಬಳಿಕ ಕರ್ಣನ ವೀರಪಟ್ಟದಲಿ
ನೆರವಣಿಗೆಯುಂಟಾದಡೊಂದೇ
ಕೊರತೆಯಿದು ನಿಮ್ಮಿಂದ ಕಡೆಯಲಿ
ನೆರತೆಯಹುದಿನ್ನುತ್ತರೋತ್ತರ ಸಿದ್ಧಿ ಬಳಿಕೆಂದ ೧೬

ದ್ರೋಣ ಭೀಷ್ಮರವೋಲು ನೆಟ್ಟನೆ
ಹೂಣಿಗರು ರಾಧೇಯ ಮಾದ್ರ
ಕ್ಷೋಣಿಪತಿಯೆಂದೆಂಬ ನುಡಿಯುಂಟೆರಡು ಥಟ್ಟಿನಲಿ
ಕೇಣವಿಲ್ಲದ ರಥಗತಿಯ ಬಿ
ನ್ನಾಣವನು ತೋರಿದಡೆ ತನ್ನಯ
ಗೋಣಿಗೊಡ್ಡಿದ ಕೈದುವನು ನೀ ತೆಗೆಸಿದವನೆಂದ ೧೭

ಬರಿದೆ ಬೋಳೈಸದಿರು ಕಾರ್ಯದ
ಹೊರಿಗೆಯೇನದ ಹೇಳು ಮೇಗಡೆ
ಮೆರೆವವರು ನಾವಲ್ಲ ನುಡಿಯಾ ಬಯಲ ಡೊಂಬೇಕೆ
ಅರುಹು ಕೇಳುವೆನೆನಲು ಶಲ್ಯನ
ಬಿರುನುಡಿಗೆ ಬೆಚ್ಚದೆ ಮಹೀಪತಿ
ಯರಿವು ತಪ್ಪದೆ ಬಿನ್ನವಿಸಿದನು ಮಾದ್ರರಾಜಂಗೆ ೧೮

ಮಾವ ಸಾರಥಿಯಾಗಿ ಕರ್ಣನ
ನೀವು ಕೊಂಡಾಡಿದಡೆ ಫಲುಗುಣ
ನಾವ ಪಾಡು ಸುರಾಸುರರ ಕೈಕೊಂಬನೇ ಬಳಿಕ
ಆವುದೆಮಗಭ್ಯುದಯವದ ನೀ
ನಾವ ಪರಿಯಲಿ ಮನ್ನಿಸಿದಡರೆ
ಜೀವ ಕೌರವ ವಂಶವೇ ಸಪ್ರಾಣಿಸುವುದೆಂದ ೧೯

ಕೇಳಿದನು ಕುರುಪತಿಯ ಮಾತಿನ
ಗಾಳಿ ತುಡುಕಿತು ಮನದ ರೋಷ
ಜ್ವಾಲೆಯನು ಮೀಸೆಗಳು ಕುಣಿದವು ಕಾಯ ಕಂಪಿಸಿತು
ಮೇಲು ಮೂಗಿನ ಬೆರಳ ಕಡುಗಾ
ದಾಲಿಗಳ ಮಣಿಮುಕುಟದೊಲಹಿನ
ನಾಲಗೆಯ ನಿರ್ದ್ರವದ ಮಾದ್ರಾಧೀಶನಿಂತೆಂದ ೨೦

ಖೂಳನೆಂಬೆನೆ ನೀ ಸಮಸ್ತ ಕ
ಳಾಳಿ ನಿಪುಣನು ಬಾಲನೆಂಬೆನೆ
ಮೇಲೆ ಪಲಿತದ ಬೀಡು ಬಿಟ್ಟಿದೆ ತಳಿತ ತನುವಿನಲಿ
ಹೇಳು ಹೇಳಿನ್ನೊಮ್ಮೆ ನುಡಿ ನುಡಿ
ಕೇಳುವೆನು ಕಿವಿಯಾರೆ ಕರ್ಣನ
ಕಾಳೆಗಕೆ ನಾವ್ ಸಾರಥಿಗಳೇ ಶಿವಶಿವಾ ಎಂದ ೨೧

ತಾರ ತಮಂತೆಯು ಬಲ್ಲೆ ಪುರುಷರ
ಚಾರು ಚರಿತವನರಿವೆ ಸುಭಟರ
ವೀರ ವೃತ್ತಿಯು ಬಲ್ಲೆ ಮಾನ್ಯರ ಮೈಸಿರಿಯ ತಿಳಿವೆ
ಆರವನು ರಾಧೇಯ ದಿಟ ನಾ
ವಾರವರು ನಮ್ಮಂತರವ ನೀ
ನಾರ ಕೈಯಲಿ ಕೇಳಿದರಿಯಾ ಶಿವಶಿವಾ ಎಂದ ೨೨

ಖೂಳನನು ಹಿಡಿತಂದು ಧರಣೀ
ಪಾಲರಲಿ ಸರಿಮಾಡಿ ರಾಜ್ಯದ
ಮೇಲೆ ನಿಲಿಸಿದೆ ಬಳಿಕ ಬಂದುದು ಖೂಳತನ ನಿನಗೆ
ಕೀಳು ಮೇಲಿನ ಸೀಮೆ ನಿನ್ನಲಿ
ಬೀಳುಕೊಂಡುದು ಸಾಕು ನಮಗಿ
ನ್ನಾಳುತನವೇಕೆನುತ ಧಿಮ್ಮನೆ ನಿಂದನಾ ಶಲ್ಯ ೨೩

ಒಡನೆ ನಿಂದನು ಸೆರಗ ಹಿಡಿದವ
ಗಡಿಸಲೇಕಿನ್ನೆನುತ ಗುಣದಲಿ
ನುಡಿದು ಕುಳ್ಳಿರಿಸಿದನು ಸಂತೈಸಿದನು ವಿನಯದಲಿ
ನುಡಿಗೆ ಕೋಪಿಸಲೇಕೆ ಮನವೊಡ
ಬಡುವುದೇ ಕೈಕೊಂಬುದಲ್ಲದ
ಡೊಡೆಯರುಂಟೇ ನಿಮಗೆ ಎಂದನು ಕೌರವರ ರಾಯ ೨೪

ಅರುಣ ಸಾರಥಿ ಭುವನ ಕಾರ್ಯದ
ಧುರವ ಹೊರನೇ ಕೃಷ್ಣನಲ್ಲಾ
ನರನ ಸಾರಥಿಯಾಗನೇ ಪರಕಾರ್ಯದನುವರಿದು
ಹರನ ಸಾರಥಿ ಕಮಲಸಂಭವ
ಸುರರ ಕಾರ್ಯಕ್ಕೊದಗನೇ ಸ
ತ್ಪುರುಷರೇ ಪರಕಾರ್ಯನಿಷ್ಠರು ಕೋಪವೇಕೆಂದ ೨೫

ಸವರಿದರು ಕುರುವಂಶವನು ಪಾಂ
ಡವರು ಸಕಲ ಮಹಾರಥರು ಸಲೆ
ಸವೆದುದಿಲ್ಲಿ ನದೀಸುತ ದ್ರೋಣಾದಿಗಳು ಸಹಿತ
ಅವರೊಳಳಿದವರಿಬ್ಬರೇ ನೀ
ವವಸರಕೆ ಸಾರಥ್ಯವನು ನಿ
ಮ್ಮವರ ಮೇಲನುರಾಗವುಳ್ಳಡೆ ಮಾಡು ಮಾಣೆಂದ ೨೬

ನಿನ್ನ ಕೈಯಲಿ ಬರಲಿ ಸತ್ತಿಗೆ
ಯೆನ್ನ ಕೈಯಲಿ ಹೊಡೆಸು ಬಂಡಿಯ
ನಿನ್ನ ತಮ್ಮನ ಹೆಗಲಲಾತನ ಹಡಪ ಹಾಯ್ಕಿರಲಿ
ನಿನ್ನ ಬಂಧುಗಳವನ ಬೇಂಟೆಯ
ಕುನ್ನಿಗಳ ಹಿಡಿಯಲಿ ಸುಯೋಧನ
ನಿನ್ನ ಭಾಗ್ಯವನೊದೆದು ಕಳೆ ಕೇಡಾವುದೆಮಗೆಂದ ೨೭

ಗೆಲುವೆನವದಿರನೆಂಬ ಬರಿಕ
ಕ್ಕುಲಿತೆಯಲ್ಲದೆ ದ್ರೋಣಭೀಷ್ಮರಿ
ಗಳುಕದರಿಭಟರಿವನ ಕೊಂಬರೆ ಕಂಡು ಮರುಳಾದೈ
ಬಲುಬಿದಿರನುಚ್ಚಳಿಸುವಳಿಮುಖ
ಕೆಳೆಯ ಕಬ್ಬಾನುವುದೆ ಕೌರವ
ಕುಲವನದ್ದಿದೆ ಪಾಪಿ ಕಷ್ಟವ ನೆನೆದೆ ಹೋಗೆಂದ ೨೮

ಅರಿಶಿರವ ಸೆಂಡಾಡಿ ಎನ್ನೀ
ಕರವು ವಂದಿ ವ್ರಾತದೆಡರನು
ಪರಿಹರಿಸಿತೀ ಹದನು ನಾವ್ ಹಿಂದೀಸು ಕಾಲದಲಿ
ಧರಣಿಪತಿ ನಿನ್ನಿಂದ ಕರ್ಣನ
ತುರಗ ವಾಘೆಯ ಚಮ್ಮಟಿಗೆಗೀ
ಕರವು ಹೂಡುವುದಾಯ್ತು ಹರಹರ ಧನ್ಯರಾವೆಂದ ೨೯

ಜಾತಿಹೀನರ ಕರ್ಮವೃತ್ತಮ
ಜಾತಿಗಳ ಕರ್ತವ್ಯ ತಿರ್ಯ
ಗ್ಜಾತಿಗಳ ಗತಿ ಧರ್ಮವೃತ್ತಿಯ ಸೇರುವೆಯನರಿದು
ಆತನಳವಡಿಸಿದನು ವಿಧಿ ನಿಮ
ಗಾತ ಮಾಡಿದನಳಿವ ಸಾಮ
ರ್ಥ್ಯಾತಿಶಯವುಂಟೈಸಲೇ ಶಿವಯೆನುತ ಖತಿಗೊಂಡ ೩೦

ಆಸುರದ ಬೆರಗೇಕೆ ನಮ್ಮೊಡ
ನೀಸು ಮಾತೇಕೆಮ್ಮ ರಕ್ಷಿಸು
ವಾಸೆಯುಂಟೇ ಮಾಡಿ ಮಾಣ್ಬುದು ಕರುಣವಿಲ್ಲದಡೆ
ವಾಸಿವಟ್ಟವ ನೋಡಿದನೆ ಲ
ಕ್ಷ್ಮೀಶನವರಲಿ ಸೂತ ಕರ್ಮಾ
ಭ್ಯಾಸಿಯೇ ಮುರವೈರಿ ಮುನ್ನೆಂದನು ಸುಯೋಧನನು ೩೧

ಮುರಹರನ ಸಮಜೋಳಿ ನೀವಾ
ನರನ ಸಮಗೈ ಕರ್ಣನಿಂತಿ
ಬ್ಬರನು ನೀವಿಬ್ಬರು ವಿಭಾಡಿಸಿ ಗೆಲುವುದೇನರಿದು
ಸುರರ ಕಾರ್ಯದಲಂದು ಸಾರಥಿ
ಸರಸಿಜೋದ್ಭವನಾಗನೇ ಎ
ನ್ನರಸುತನವಿಂದಳಿದುದಿದ ನೀನುಳುಹಬೇಕೆಂದ ೩೨

ಒಣಗುತಿದೆ ಕುರುವಂಶಲತೆ ಫಲು
ಗುಣನ ಕೋಪಾನಳನ ನಾಲಗೆ
ಕೆಣಕುತಿದೆ ಕಕ್ಕುಲಿತೆಬಟ್ಟರೆ ಕಾಣೆ ಕಾವವರ
ಅಣಕಿಸದೆ ಕಾರುಣ್ಯ ವರ್ಷವ
ನೊಣಗಲಲಿ ಸುರಿ ಪಾಪಿ ಮಕ್ಕಳ
ಹೆಣನ ಕಾಣುತ ದುಃಖವಿಲ್ಲ ದುರಾತ್ಮ ನೀನೆಂದ ೩೩

ದೇವಕೀಸುತನೇನು ಬಂಡಿಯ
ಬೋವಗುಲದಲಿ ಜನಿಸಿದನೆ ಮೇ
ಣಾ ವಿರಿಂಚಿಯದಾವ ಸಾರಥಿಕುಲದ ಪೀಳಿಗೆಯೊ
ಕಾವುದೊಬ್ಬರನೊಬ್ಬರಿದರೊಳ
ಗಾವ ಹಾನಿ ಪರ ಪ್ರಯೋಜನ
ಭಾವಕರು ಸತ್ಪುರುಷರಿದಕೆ ವಿಚಾರವೇನೆಂದ ೩೪

ಗುರು ಪಿತಾಮಹರಿಂದ ಮೋರೆಯ
ಮುರಿದ ವಿಜಯ ವಧೂ ಕಟಾಕ್ಷವ
ತಿರುಹಿ ಹಾಯ್ಕುವ ಗಂಡನಾವನು ನೀವು ತಪ್ಪಿದಡೆ
ಕುರು ಕುಲೋದ್ಧಾರಕನು ಮಾದ್ರೇ
ಶ್ವರನೆನಿಪ ವಿಖ್ಯಾತಿ ಬಂದುದು
ಪರಿಹರಿಸದಿರು ಮಾವ ಎಂದೆರಗಿದನು ಚರಣದಲಿ ೩೫

ಶಿವ ಶಿವಾ ನಿರ್ಬಂಧವಿದು ಕೌ
ರವನಲಾಯಿತೆ ಮದ್ಯಮಯು ಗಂ
ಧವನು ಕುಡಿಸುವ ಪರಿಯಲಾ ತುಂಬಿಗಳ ಸೆರೆವಿಡಿದು
ಅವನಿಪತಿಗಳ ಸೇವೆಯಿದು ಕ
ಷ್ಟವಲೆ ಮೊದಲಲಿ ಬಳಿಕ ನಾವಿ
ನ್ನವಗಡಿಸಲೇನಹುದು ಸಾರಥಿಯಾದೆವೇಳೆಂದ ೩೬

ಆಯಿತೇ ಸಂತೋಷ ಕಮಲದ
ಳಾಯತೇಕ್ಷಣನೊಡನೆ ಬಂಡಿಯ
ಬೋಯಿಕೆಗೆ ವೀಳೆಯವ ಹಿಡಿದೆವು ಹಲವು ಮಾತೇನು
ದಾಯ ಬಂದುದೆ ನಿನಗೆ ಬೊಮ್ಮಂ
ಗಾಯಿತೇ ಸೂತತ್ವವಾದಡೆ
ರಾಯ ಹೇಳೈ ತ್ರಿಪುರ ದಹನದ ಕಥೆಯ ನೀನೆಂದ ೩೭

ಆರನೆಯ ಸಂಧಿ

ಸೂ. ನಗರ ಮೂರರ ದೂರುಕಾರರ
ದುಗುಡವನು ಪರಿಹರಿಸಿ ಕರುಣಾ
ಳುಗಳರಸ ಶಿವ ಸಂತವಿಟ್ಟನು ಸುರ ಕದಂಬಕವ

ಕೇಳು ಜನಮೇಜಯ ಧರಿತ್ರೀ
ಪಾಲ ಕೌರವ ನೃಪತಿ ಶಲ್ಯಗೆ
ಹೇಳಿದನು ಸಾರಥ್ಯ ಸಂಯೋಜನ ಸಮಾಹಿತವ
ಲೋಲನಾಪರಿಕರ್ಮಿತರು ನಿ
ರ್ಮೂಲನೈಕಕ್ಷಮು ಸುಧಾಕರ
ಮೌಳಿ ಕೇಳೀ ಕಲಿತ ವಿಸ್ತರ ವರ ಕಥಾಂತರವ ೧

ತಾರಕನ ಮಕ್ಕಳುಗಳೆನಿಸುವ
ತಾರಕಾಕ್ಷನು ಕಮಳಲೋಚನ
ವೀರ ವಿದ್ಯುನ್ಮಾಲಿಯೆಂಬೀ ಮೂವರತಿಬಳರು
ಘೋರತರ ಸುತಪಃಪ್ರಭಾವಿ
ಸ್ತಾರಿಗಳಸಂಖ್ಯಾತ ಯುಗದಲಿ
ವಾರಿಜೋದ್ಭವನನು ವಶೀಕರಿಸಿದರು ಭಕುತಿಯಲಿ ೨

ಬಂದು ಕಮಲಜನಿವದಿರಿದಿರಲಿ
ನಿಂದನೆಲೆ ಋಷಿಗಳಿರ ಸಾಕಿ
ನ್ನೆಂದು ಪರಿಯಂತೀ ತಪೋನುಷ್ಠಾನದಾಯಾಸ
ನಿಂದು ಬೇಡುವುದೊಲಿದುದನು ನಾ
ವಿಂದು ಸಲಿಸುವೆವೆನಲು ನಿಮಿಷಕೆ
ಕಂದೆರೆದು ಕಮಳಾಸನಂಗೆರಗಿದರು ಭಕ್ತಿಯಲಿ ೩

ಎನಿತನೊಲಿದಡೆ ಏನಹುದು ದು
ರ್ಜನರು ಪುರುಷಾರ್ಥಿಗಳೆ ಹಾವಿಂ
ಗನಿಲವೇ ಆಹಾರವಾದಡೆ ಬಿಟ್ಟುದೇ ವಿಷವ
ದನುಜರದ್ಭುತ ತಪವ ಮಾಡಿದ
ರನಿಮಿಷಾವಳಿ ಬೇಂಟೆಯಾಡಲು
ನೆನೆದು ಬಿನ್ನೈಸಿದರು ಕಮಲಭವಂಗೆ ನಿಜಮತವ ೪

ರಚಿಸುವೆವು ಪುರ ಮೂರನಗ್ಗದ
ಖಚರ ಕಿನ್ನರ ಸಿದ್ಧ ನಿರ್ಜರ
ನಿಚಯುವೆಮಗೋಲೈಸಿ ಹೋಗಲಿ ಹಲವುಮಾತೇನು
ಉಚಿತದಲಿ ನಿಮ್ಮಡಿಗಳನು ಪರಿ
ರಚಿಸಲಾವೋಲೈಸಿಸುವೆವು ವರ
ವಚನ ನಿಮ್ಮದು ಕರುಣಿಸುವುದಮರತ್ವವನು ನಮಗೆ ೫

ಹಾ ಮಹಾದೇವೀ ಕುಠಾರರ
ತಾಮಸದ ನೆನಹಿದ್ದ ಪರಿಯಿಂ
ತೀ ಮಹಾನುಷ್ಠಾನವಿದರಲಿ ಶಾಂತಿ ಲವವಿಲ್ಲ
ಕಾಮಿತವನಿವದಿರಿಗೆ ಕೊಟ್ಟರೆ
ಕಾಮಹರ ಕಮಳಾಕ್ಷರಿಗೆ ಸಂ
ಗ್ರಾಮದಲಿ ಜಯವಾಗದೆಂದಡಿಗಡಿಗೆ ಬೆರಗಾದ ೬

ಹುಲಿಗೆ ಧೈರ್ಯವನೆರಕೆಗಳನಹಿ
ಗಳಿಗೆ ಖಳರಿಗೆ ಲಕ್ಷ್ಮಿಯನು ಕ
ತ್ತಲೆಗೆ ಕಾಠಿಣ್ಯವನು ಚೈತನ್ಯವನು ಗಿರಿಗಳಿಗೆ
ಕೊಲೆಗಡಿಕರಿಗೆ ನಿತ್ಯದೇಹವ
ನೊಲಿದು ಕೊಟ್ಟರೆ ಲೇಸು ಬಳಿಕೇ
ನೆಲೆ ಮಹಾದೇವೇನ ನೆನೆದರೊ ಶಿವಶಿವಾ ಎಂದ ೭

ಪುರವ ವಿರಚಿಸಿ ದಿವ್ಯ ಸಾಸಿರ
ವರುಷ ಕೈಗೂಡಿದರೆ ಒಂದೇ
ಸರಳಲಾವವನೆಚ್ಚಡಾಗಳೆ ನಿಮಗೆ ಕಡೆಗಾಲ
ಬರಲಿ ಬಳಿಕಿಂದ್ರಾದಿ ನಿರ್ಜರ
ನೊರಜುಗಳ ನೀವ್ ಸದೆಯಿ ಹೋಗೆಂ
ದರಸ ಕೇಳೈ ಕೊಟ್ಟನವರಿಗೆ ಕಮಲಭವ ವರವ ೮

ಕರುಣವಿನಿತೇ ಸಾಕು ನಮಗೇ
ನುರದಲೊಗೆದವೆ ಮೊಲೆಗಳೆಮ್ಮಯ
ಪುರವನೊಂದಂಬಿನಲಿ ಗೆಲುವನ ತಾಯಿ ಹುಸಿಯೆನುತ
ದುರುಳರೀತನ ಬೀಳುಕೊಂಡು
ಬ್ಬರದ ಹರುಷದಿ ಹೆಚ್ಚಿ ಮಯನನು
ಕರಸಿ ಮಾಡಿಸಿದರು ಮಹಾ ವಿಭವದಲಿ ನಗರಗಳ ೯

ಕನಕದಲಿ ರಜತದಲಿ ಬಲುಗ
ಬ್ಬುನದಲೊಂದೊಂದಕ್ಕೆ ಶತ ಯೋ
ಜನದ ತೆರಹುಗಳೆಡೆಗೆ ಹಬ್ಬಿಸುವಮಳ ತೋರಣದ
ವಿನುತ ನಗರಿಗಳಾದುವಲ್ಲಿಯ
ದನುಜರೆರೆಗಳ ಹಾಯ್ಕಿ ಗಾಣದ
ಲನಿಮಿಷರನೀಡಾಡಿ ಕೊಂಡರು ದುರ್ಗವನು ಸುರರ ೧೦

ಸೂರೆವೋಯಿತು ಸುರಪತಿಯ ಭಂ
ಡಾರ ಹೆಂಡಿರು ಸಹಿತ ನಿರ್ಜರ
ನಾರಿಯರು ತೊತ್ತಾದರಮರಾರಿಗಳ ಮನೆಗಳಿಗೆ
ಮೂರು ಭುವನದೊಳಿವದಿರಾಣೆಯ
ಮೀರಿ ಬದುಕುವರಿಲ್ಲ ಕಡೆಯಲಿ
ತಾರಕನ ಮಕ್ಕಳಿಗೆ ಕೈವರ್ತಿಸಿತು ಜಗವೆಂದ ೧೧

ನೆರೆದುದಮರರು ಹಾಳು ಹರಿ ಸಾ
ಗರದ ಕಡೆಯಲಿ ರೂಹುಗಳೆದು
ಟ್ಟರುವೆಗಳ ಕಾಳಿಕೆಯ ಮೋರೆಯ ತಾರಿದೊಡಲುಗಳ
ಹುರಿದ ಧೈರ್ಯದ ತಳ್ಳವಾರುವ
ತರಳ ಹೃದಯದ ದೇವರಿಂದ್ರನ
ನರಸಿ ಕಂಡರು ತಮ್ಮೊಳಾಳೋಚನೆಯ ಮಾಡಿದರು ೧೨

ತಾರಕನ ಮಕ್ಕಳುಗಳೇ ಹಿಂ
ದಾರ ಗೆಲಿದರು ತಪವ ಮಾಡಿ ವಿ
ಕಾರಿಗಳು ಬ್ರಹ್ಮಂಗೆ ಬಂದಿಯನಿಕ್ಕಿದರು ಬಳಿಕ
ವಾರಿಜೋದ್ಭವ ಮೇಲನರಿಯ ಕು
ಠಾರ ನಾಯ್ಗಳ ಹೆಚ್ಚಿಸಿದನಿದ
ನಾರಿಗರುಪುವೆವೆಂದು ಸುಯ್ದರು ಬಯ್ದು ಕಮಲಜನ ೧೩

ಆದರೆಯುಂ ನಮಗಾತನೇ ಗತಿ
ಯೀ ದುರಾತ್ಮರಿಗೆಂದು ಹರಿವೆಂ
ದಾದರಿಸಿ ಕೇಳುವೆವೆನುತ ಕಮಲಜನ ಹೊರೆಗೈದಿ
ಖೇದವನುಸುರಿದರು ಪಿತಾಮಹ
ನಾ ದಿವಿಜಗಣ ಸಹಿತ ಬಂದನು
ವೇದಸಿದ್ಧ ವಿಶುದ್ಧ ದೈವವ ಕಾಬ ತವಕದಲಿ ೧೪

ಬಂದು ಕೈಲಾಸಾದ್ರಿಯಲಿ ಗಿರಿ
ನಂದನಾವಕ್ಷೋಜ ಘುಸೃಣ
ಸ್ಕಂಧತನು ಚಿನ್ಮಯ ನಿರಂಜನ ಭೂರಿ ಪಂಜರನ
ವಂದ್ಯಮಾನ ಸುರಾಸುರೋರಗ
ವೃಂದ ಮಣಿಮುಕುಟ ಪ್ರಭಾ ನಿ
ಷ್ಯಂದ ಭೂಯಸ್ತಿಮಿತಕಾಯನ ಕಂಡನಬುಜಭವ ೧೫

ಕೊರಳ ಕಪ್ಪಿನ ಚಾರು ಚಂದ್ರಾ
ಭರಣ ಮೂರ್ಧದ ಭಾಳನಯನದ
ಭರಿತ ಪರಿಮಳದಂಗವಟ್ಟದ ಜಡಿದ ಕೆಂಜೆಡೆಯ
ಕರಗಿ ಕಾಸಿದ ವಿದ್ಯೆಯನು ಬೇ
ರಿರಿಸಿ ಶುದ್ಧಬ್ರಹ್ಮವನು ಕಂ
ಡರಿಸಿದಂತಿರಲೆಸೆವ ಶಿವನನು ಕಂಡನಬುಜಭವ ೧೬

ವೇದವರಿಯದ ತರ್ಕವಿದ್ಯಾ
ವಾದ ನಿಲುಕದ ಬುಧರ ಮತಿ ಸಂ
ಪಾದನೆಗೆ ಮುಖಗೊಡದ ವಾಚ್ಯಾಯನರ ಚೇತನಕೆ
ಹೋದ ಹೊಲಬಳವಡದ ಬ್ರಹ್ಮೇಂ
ದ್ರಾದಿ ಸುರರುಬ್ಬಟೆಗೆ ಸೋಲದ
ನಾದಿ ದೇವರದೇವ ಶಿವನನು ಕಂಡನಬುಜಭವ ೧೭

ಕಂತುಹರನನು ವಿಮಳನನು ವೇ
ದಾಂತ ವೇದ್ಯನನದ್ವಿತೀಯನ
ಚಿಂತ್ಯ ಮಹಿಮನ ಸಚ್ಚಿದಾನಂದೈಕರಸಮಯನ
ಅಂತ್ಯರಹಿತನನಪ್ರಮೇಯನ
ನಂತರೂಪನನಂಘ್ರಿಭಜಕ ಭ
ವಾಂತಕನನುದ್ದಂಡ ದೈವವ ಕಂಡನಬುಜಭವ ೧೮

ಇದ್ದುದಗಣಿತ ರುದ್ರ ಕೋಟಿಗ
ಳಿದ್ದುದನುಪಮ ವಿಷ್ಣು ಕೋಟಿಗ
ಳಿದ್ದುದಂಬುಜಭವ ಸುರೇಂದ್ರಾದಿಗಳು ಶತಕೋಟಿ
ಇದ್ದುದಮಳಾಮ್ನಾಯ ಕೋಟಿಗ
ಳಿದ್ದುದಗಣಿತ ಮಂತ್ರಮಧ್ಯದೊ
ಳಿದ್ದ ನಿರ್ಮಳ ಖಂಡಪರಶುವ ಕಂಡನಬುಜಭವ ೧೯

ಪುಳಕ ಜಲವುಬ್ಬರಿಸೆ ಕುಸುಮಾಂ
ಜಳಿಯನಂಘ್ರಿದ್ವಯಕೆ ಹಾಯಿಕಿ
ನಳಿನಭವ ಮೆಯ್ಯಿಕ್ಕಿದನು ಭಯಭರಿತ ಭಕ್ತಿಯಲಿ
ಬಳಿಯಲಮರೇಂದ್ರಾದಿ ದಿವಿಜಾ
ವಳಿಗಳವನಿಗೆ ಮೆಯ್ಯ ಚಾಚಿದ
ರುಲಿವುತಿರ್ದುದು ಜಯಜಯ ಧ್ವಾನದಲಿ ಸುರಕಟಕ ೨೦

ಪರಮಕರುಣ ಕಟಾಕ್ಷರಸದಲಿ
ಹೊರೆದು ಕಮಳಾಸನನ ಹತ್ತಿರೆ
ಕರೆದು ಮನ್ನಿಸಿ ನಿಖಿಳ ನಿರ್ಜರ ಜನವ ಸಂತೈಸಿ
ಬರವಿದೇನಿದ್ದಂತೆ ವಿಶ್ವಾ
ಮರ ಕದಂಬಕ ಸಹಿತ ಎಂದಂ
ಬುರುಹಭವನನು ನಸುನಗುತ ನುಡಿಸಿದನು ಶಶಿಮೌಳಿ ೨೧

ತಾರಕನ ಮಕ್ಕಳುಗಳಿಗೆ ನೆರೆ
ಸೂರೆವೋದುದು ಸುರರ ಸಿರಿ ಮು
ಮ್ಮಾರುವೋದುದು ಸುರರ ಸತಿಯರು ಖಳರ ಮನೆಗಳಿಗೆ
ಚಾರು ವೈದಿಕ ಹವ್ಯಕವ್ಯ ವಿ
ಹಾರ ವೃತ್ತಿಗಳಳಿದವಿದನವ
ಧಾರಿಸೆಂದಬುಜಾಸನನು ಮಾಡಿದನು ಬಿನ್ನಹವ ೨೨

ನಗೆಯ ಮೊಳೆ ನಸುಹೊಳೆಯೆ ಬೊಮ್ಮನ
ಮೊಗವ ನೋಡಿದನಭವನೀಶನ
ಬಗೆಯ ಭಾವವನರಿದು ತಲೆಗುತ್ತಿದನು ಕಮಲಭವ
ದುಗುಡವನು ಬಿಡಿ ನಿಖಿಳ ದಿವಿಜಾ
ಳಿಗಳು ಪಶುಗಳಲಾ ವಿರಿಂಚನ
ವಿಗಡತನದಲಿ ಕೆಟ್ಟಿರಕಟಿನ್ನಂಜಬೇಡೆಂದ ೨೩

ಪಶುಪತಿತ್ವವ ನಮಗೆ ಕೊಡಿ ನೀವ್
ಪಶುಗಳಾಗಿರಿ ಪಾಶುಪತ ವರ
ನಿಶಿತ ಶರದಲಿ ದೈತ್ಯ ದುರ್ಗವನುರುಹಿ ತೋರುವೆವು
ದೆಸೆದೆಸೆಗೆ ಹರೆದಖಿಳದೇವ
ಪ್ರಸರವನು ನೀವ್ ನೆರಹಿ ಮೇಲಿ
ನ್ನಸಮಸೆಗೆ ಹೆದರದಿರಿ ಎಂದನು ನಗುತ ಮದನಾರಿ ೨೪

ಜಾರಿದುಬ್ಬಿನ ಹೊತ್ತ ದುಗುಡದ
ಮೋರೆಗಳ ಮೋನದ ನಿಹಾರದ
ದೂರುಗಂಗಳ ದೇವ ನಿಕರವ ಕಂಡು ಕರುಣದಲಿ
ಏರುವಡೆದುದು ಮನವವಿದ್ಯೆಗೆ
ಮಾರುವೋದಿರಲಾ ಎನುತ ಶಿವ
ತೋರಿ ನುಡಿದನು ಪಾಶುಪತ್ಯದ ಸಾರ ಸಂಗತಿಯ ೨೫

ಕರ್ಮಕಿಂಕರರಾಗಿ ಕೃತ ದು
ಷ್ಕರ್ಮವಾಸನೆವಿಡಿದು ತಾನೇ
ಕರ್ಮಕರ್ತನು ಭೋಗಿ ತಾನೇ ದುಃಖಿ ಸುಖಿಯೆಂದು
ನಿರ್ಮಳಾತ್ಮನೊಳೀಯಹಂಕೃತಿ
ಧರ್ಮವನೆ ನೇವರಿಸಿ ಮರುಗುವ
ದುರ್ಮತಿಗಳನು ಪಶುಗಳೆಂದರೆ ಖೇದವೇಕೆಂದ ೨೬

ಪಂಚವಿಂಶತಿ ತತ್ವರೂಪದ
ಸಂಚವರಿಯದೆ ನೀತಿಮುಖದಲಿ
ರಂಚೆಗಾಣದೆ ಸಗುಣಮಯ ನೀಹಾರದಲಿ ಮುಳುಗಿ
ಮಿಂಚುವೆಳಗಿನ ಬಳಕೆಯಲಿ ಮನ
ಮುಂಚಿ ಮೈಗೊಂಡಳಲುವಾತುಮ
ವಂಚಕರು ನೀವ್ ಪಶುಗಳೆಂದರೆ ಖೇದವೇಕೆಂದ ೨೭

ತೋರುವೀ ಜಗವೆಲ್ಲ ಬೊಮ್ಮವೆ
ತೋರುತಿದೆಯೆನಿಪರ್ಥದಲಿ ಸಲೆ
ತೋರುವೀ ಜಗಕೆಲ್ಲ ಪರತತ್ವದಲಿ ಪರಿಣಾಮ
ತೋರುವೀ ತೋರಿಕೆಯೊಳಗೆ ಸಲೆ
ಮಿರಿ ತೋರುವ ನಿಜವನರಿಯದ
ಗಾರುಗಳು ನೀವ್ ಪಶುಗಳೆಂದರೆ ಖೇದವೇಕೆಂದ ೨೮

ಆದಿಭೌತಿಕದಿಂದ ನೊಂದು ವಿ
ರೋಧಿ ಷಡ್ವರ್ಗದ ವಿಕಾರ
ವ್ಯಾಧಿಯಲಿ ಬೆಂಡಾಗಿ ಭವಪಾಶದಲಿ ಬಿಗಿವಡೆದು
ವಾದ ರಚನೆಯ ಬಲೆಗೆ ಸಿಲುಕಿ ವಿ
ರೋಧಗೊಂಬೀ ಮೋಹ ವಿದ್ಯಾ
ಸಾಧಕರು ನೀವ್ ಪಶುಗಳೆಂದರೆ ಖೇದವೇಕೆಂದ ೨೯

ಪಶುಪತಿಯೆ ಪರಮಾತ್ಮ ಜೀವರು
ಪಶುಗಳೀ ಪರಿ ಜೀವ ಭಾವದೊ
ಳೆಸಗುವರು ನೀವ್ ಪಶುಗಳೀಗಳು ನಿಮ್ಮ ರಕ್ಷಣವ
ಪಸರಿಸುವ ಪರಮಾತ್ಮ ತಾನೀ
ಘಸಣೆ ನಿಮಗೇಕೆಂದು ದೇವ
ಪ್ರಸರವನು ತಿಳುಹಿದನು ಕಾರುಣ್ಯದಲಿ ಕಾಮಾರಿ ೩೦

ತುಂಬಿಕೊಟ್ಟುದವಿದ್ಯೆಯನು ಸುಧೆ
ಗೊಬ್ಬುಗಳ ಗಂಡಿಗರ ಗಾಢದ
ಗರ್ಭವನು ಹೊಳ್ಳಿಸಿತು ಗರಳಗ್ರೀವನುಪದೇಶ
ಹಂಬ್ಬಿನಲಿ ಮಾತಾಡಿ ತಮ್ಮೊಳ
ಗೊಬ್ಬರೊಬ್ಬರು ತಿಳಿದು ಸಕಳ ಸು
ಪರ್ಬಜನವೆರಗಿದುದು ಜಯಜಯ ಎನುತ ಪಶುಪತಿಗೆ ೩೧

ಜಗವುಘೇ ಎಂದುದು ಜಯಧ್ವನಿ
ಜಗವ ರ್ಝೊಂಪಿಸಿತೊಗ್ಗಿನಂಜಳಿ
ಗಗನದಗಲಕೆ ಕುಣಿವುತಿದ್ದುದು ಸುರರ ಭಾಳದಲಿ
ಬೆಗಡು ಬೀತುದು ಬೇಸರಿನ ಬಲು
ದಗಹು ಸೋತುದು ಶಿವಗೆ ದೈತ್ಯಾ
ರಿಗಳು ಮುದದಲಿ ಮಾಡಿದರು ಮೂರ್ಧಾಭಿಷೇಚನವ ೩೨

ಪಾಶುಪತ್ಯದ ಪಟ್ಟವಾಯ್ತು ಮ
ಹೇಶನಲಿ ಬ್ರಹ್ಮಾದಿ ದೇವರು
ವಾಸಿವಟ್ಟವ ಬಿಟ್ಟರೋಲೈಸಿದರು ಪಶುಪತಿಯ
ಪಾಶುಪತ ಸುವ್ರತವ ಧರಿಸಿದು
ದಾ ಸುಪರ್ವಸ್ತೋಮ ವಿಶ್ವಾ
ಧೀಶನೆಸೆದನು ಕೋಟಿ ಶತಸೂರ್ಯ ಪ್ರಕಾಶದಲಿ ೩೩

ಏಳನೆಯ ಸಂಧಿ

ಸೂ. ಕಾಮಕೋಳಾಹಳನು ದಕ್ಷನ
ಹೋಮದಳವುಳಕಾರ ಹರ ನಿ
ಸ್ಸೀಮದಲಿ ಪುರ ಮೂರ ಗೆಲಿದನು ಸಲಹಿದನು ಸುರರ

ರಚಿಸಿ ರಥವನು ಭೀತಿ ಬೇಡಿ
ನ್ನುಚಿತವೇನದ ಮಾಡಿ ದೈತ್ಯ
ಪ್ರಚಯವನು ಪರಿಹರಿಸಿ ಕೊಡುವುದು ಪಾಶುಪತ ಬಾಣ
ಕಂಚಿತರಿನ್ನೇಗುವರು ಖಳರಿ
ನ್ನಚಳಿತವಲೇ ನಿಮ್ಮ ಪದವೆನೆ
ನಿಚಿತಹರುಷರು ವಿಶ್ವಕರ್ಮಂಗರುಹಿದರು ಹದನ ೧

ಮಾವ ಕೇಳದುಭುತವನೀ ವಿ
ಶ್ವಾವನೀತಳವಾಯ್ತು ರಥ ತಾ
ರಾವಳಿಗಳೀಸಾಯ್ತು ಸತ್ತಿಗೆಯಾಯ್ತು ಕನಕಾದ್ರಿ
ಆವುದಯ ಘನ ಶೈಲವಸ್ತ್ರ
ಗ್ರಾವ ಕೂಬರ ರಥದಧಿಷ್ಠಾ
ನಾವಲಂಬನವಾಗೆ ರಚಿಸಿದನಾತ ನಿಮಿಷದಲಿ ೨

ಆಸುರವಲೇ ವಿಂಧ್ಯ ಹಿಮಗಿರಿ
ಹಾಸು ಹಲಗೆಗಳಾದವಚ್ಚು ಮ
ಹಾಸಮುದ್ರವೆ ಆಯ್ತು ಗಾಲಿಗೆ ಬೇರೆ ತರಲೇಕೆ
ಆ ಸಸಿಯ ಸೂರಿಯನ ಮಂಡಲ
ವೈಸಲೇ ಗಂಗಾದಿ ಸಕಲ ಮ
ಹಾ ಸರಿತ್ಕುಲವಾಯ್ತು ಚಮರಗ್ರಾಹಿಣಿಯರಲ್ಲಿ ೩

ರಾಯ ಕೇಳ್ಳೆ ಮತ್ತೆ ಯಾಹವ
ನೀಯ ಗಾರುಹಪತ್ಯ ದಕ್ಷಿಣ
ವಾಯುಸಖರಾದರು ತ್ರಿವೇಣುಕವಾ ರಥಾಗ್ರದಲಿ
ಆಯಿತಲ್ಲಿ ವರೂಥ ನಕ್ಷ
ತ್ರಾಯತವು ಬಳಿಯನುಕರುಷವೊಂ
ದಾಯಿತಾ ಗ್ರಹರಾಜಿಯಾದವು ಮಾವ ಕೇಳೆಂದ ೪

ಆ ರಥಾಗ್ರಕೆ ವೇದ ನಾಲುಕು
ವಾರುವಂಗಳ ಹೂಡಿದರು ನೊಗ
ನಾ ರಜನಿ ದಿನ ಮಾಸವುತ್ತರದಕ್ಷಿಣಾಯನವು
ಸಾರ ಧೃತಿ ವೇದಪ್ರತತಿ ವಿ
ಸ್ತಾರವಾದವು ನೊಗನ ಕೀಲ್ಗಳು
ಚಾರು ಕುಲಫಣಿನಿಕರ ಹಯಬಂಧನದ ನೇಣುಗಳು ೫

ಮಿಳಿಗಳಾದವು ಕುಹು ಸುತಾರಾ
ವಳಿಗಳಮಳ ಪ್ರಣವವಾದುದು
ಮೊಳೆಯ ಬಲುಚಮ್ಮಟಿಗೆ ಹಗ್ಗಕೆ ವರ ಷಡಂಗಮವು
ನಿಲಿಸಲಖಿಳ ಕ್ರತು ರಥಾಂಗಾ
ವಳಿಗಳಾದವು ವಿವಿಧವರ್ಣದ
ಜಲದಪಟಲ ಪತಾಕೆಯಾದವು ರಥದ ಬಳಸಿನಲಿ ೬

ಕಾಲದಂಡದ ರೌದ್ರದಂಡ ಕ
ರಾಳ ರಥ ಸೀಮಾಗ್ರ ದಂಡ ವಿ
ಶಾಲ ವಿಮಳ ಬ್ರಹ್ಮದಂಡದ ಸಾಲು ಚೆಲುವಾಯ್ತು
ಮೇಲುವಲಗೆಯ ಸುತ್ತ ಚಮರೀ
ಜಾಳ ಕನಕಧ್ವಜದ ತುದಿಯಲಿ
ಮೇಳವಿಸಿದನು ವಿಶ್ವಕರ್ಮನು ವಿಪುಳ ಶಾಕ್ವರವ ೭

ಅರಸ ಕೇಳ್ ಖತುಚರಿತ ಸಂವ
ತ್ಸರವೆ ಧನು ತತ್ಕಾಳ ರಾತ್ರಿಯೆ
ತಿರುವಿದೇನಾಶ್ಚರ‍್ಯವೈ ಶಿವ ಕಾಲರೂಪಿನಲಿ
ಸರಳ ರಚನೆಗೆ ವಿಷ್ಣುವನೆ ಸಂ
ಸ್ಮರಿಸಿದರು ವೈಕುಂಠತೇಜ
ಸ್ಫುರಿತ ಮಾರ್ಗಣ ಮೆರೆದುದಗ್ನಿಷ್ಟೋಮ ಮುಖವಾಗಿ ೮

ಶ್ರುತವೆ ನಿಮಗಿದು ಮಾವ ಬಹಳಾ
ದ್ಭುತದ ರಥ ನಿರ್ಮಾಣ ದೇವ
ಪ್ರತತಿ ನೆರೆದುದು ನೆರೆ ಚತುರ್ದಶ ಭುವನವಾಸಿಗಳ
ಶತಮುಖ ಬ್ರಹ್ಮಾದಿಗಳು ತ
ಮ್ಮತಿಶಯದ ತೇಜೋರ್ಧವನು ಪಶು
ಪತಿಯ ಪದಕೋಲೈಸಿದರು ಮಾದ್ರೇಶ ಕೇಳೆಂದ ೯

ಆ ಮಹಾ ಶಾಂಭವ ಸುತೇಜ
ಸ್ತೋಮಕೇನದು ಕೊರತೆಯೋ ಮ
ತ್ತೀ ಮಹೇಂದ್ರ ಬ್ರಹ್ಮಮುಖ ತೇಜಸ್ವಿಗಳ ಶಕ್ತಿ
ಆ ಮಹಾದೇವನಲಿ ಸೇರಿದು
ದೀ ಮಹಾರಥಕಾಗಿ ವಿಮಳ
ವ್ಯೋಮಕೇಶನು ನಗುತ ಬಿಜಯಂಗೆಯ್ಯಲನುವಾದ ೧೦

ಕಳಚಿ ತಲೆಮಾಲೆಯನು ಕೊಟ್ಟನು
ಕೆಲದವರ ಕೈಯಲಿ ವಿಭೂತಿಯ
ಗುಳಿಗೆಯನು ನೆಗ್ಗೊತ್ತಿ ಸರ್ವಾಂಗದಲಿ ಧೂಳಿಸಿದ
ಹೊಳೆ ಹೊಳೆವ ಕೆಂಜೆಡೆಯನಹಿಪತಿ
ಯಳುಕೆ ಬಿಗಿದನು ದಂತಿಚರ್ಮವ
ನೆಲಕೆ ಮುಂಜೆರಗೆಳೆಯಲುಟ್ಟನು ದೇಸಿ ಪರಿ ಮೆರೆಯೆ ೧೧

ಖಡೆಯ ಸರಪಣಿ ತೋಳಬಂದಿಗೆ
ಪೆಡೆವಣಿಯ ಮರಿವಾವುಗಳನಳ
ವಡಿಸಿದನು ಜೋಡಿಸಿದ ಶೇಷನ ಜಳವಟಿಗೆ ಮೆರೆಯೆ
ಜಡಿವ ಕಿರುಗೆಜ್ಜೆಗಳ ಬಿಗುಹಿನ
ಉಡೆಯ ಬದ್ದುಗೆ ದಾರ ಉರಗನ
ಪೆಡೆವಣಿಯ ಗೊಂಡೆಯದ ಕಿಗ್ಗಟ್ಟೆಸೆಯೆ ಪಶುಪತಿಯ ೧೨

ನೆರೆದುದಭವನ ಕೆಲಬಲದಲು
ಬ್ಬರದ ಬೊಬ್ಬೆಯ ಜಡಿವ ಖಡ್ಗದ
ಬೆರಳ ಚಕ್ರದ ಭವಣೆಗಳ ಢವಣಿಸುವ ಧಾಣೆಗಳ
ಪರಿಪರಿಯ ಕೈದುಗಳ ಕರ್ಕಶ
ತರದ ಚರಿತದ ರೌದ್ರವೇಷದ
ವರ ಮಹಾಗಣ ನಿಕರವೊದಗಿತು ಮಾವ ಕೇಳೆಂದ ೧೩

ಸುರಬಲದ ನಿಸ್ಸಾಳ ಕೋಟಿಯ
ಮೊರಹು ಮೊಳಗಿತು ಬಿಲುಂದಿರುವಿನ
ಬ್ಬರದಲಾ ದನಿಯುಡಗಿತಗಣಿತ ವಂದಿಘೋಷದಲಿ
ಅರರೆ ವಂದಿ ಧ್ವನಿಯ ಗರ್ಭೀ
ಕರಿಸಿ ಹೆಚ್ಚಿತು ಜಯಜಯ ಧ್ವನಿ
ನೆರೆ ಚತುರ್ದಶ ಜಗವ ಜಡಿದುದು ಮಾವ ಕೇಳೆಂದ ೧೪

ಮುರಿಯೆ ಬಲವಂಕದಲುಘೇ ಎಂ
ದೆರಗಿದವು ಶ್ರುತಿಕೋಟಿ ವಾಮದ
ಕೊರಳ ಕೊಂಕಿನಲುಪನಿಷತ್ತುಗಳೆರಗಿದವು ಕೋಟಿ
ತಿರುಗೆ ಬೆನ್ನಲಿ ನೆರೆದ ಸಚರಾ
ಚರವುಘೇ ಎಂದುದು ಕಪರ್ದಿಯ
ಸರಿಸದಲಿ ಸಿಡಿಲಂತೆ ಮೊಳಗಿತು ವೀರಗಣನಿಕರ ೧೫

ನಡೆದು ರಥದಲಿ ವಾಮ ಚರಣವ
ನಿಡುತ ಧೂರ್ಜಟಿ ದೇವ ನಿಕರಕೆ
ನುಡಿದನಾವನ ನೀ ರಥಕೆ ಸಾರಥಿಯ ಮಾಡಿದಿರಿ
ಕಡೆಗೆ ಸಾರಥಿಯಿಲ್ಲದೀ ರಥ
ನಡೆವುದೇ ದಾನವರ ಥಟ್ಟಣೆ
ತೊಡೆವುದೇ ಲೇಸಾಯ್ತೆನುತ ನೋಡಿದನು ಸುರಪತಿಯ ೧೬

ಮಾವ ಕೇಳ್ಳೆ ಬಳಿಕ ಹರಿದುದು
ದೇವಕುಲ ಪರಮೇಷ್ಠಿಯಲ್ಲಿಗೆ
ಭಾವವನು ಬಿನ್ನೈಸಿದರು ನಿಜರಾಜಕಾರಿಯದ
ಆ ವಿಭುವನೊಡಬಡಿಸಿದರು ದಿವಿ
ಜಾವಳಿಗಳಿಂದಿನಲಿ ಕರ್ಣಗೆ
ನೀವು ಸಾರಥಿಯಾದಡಭಿಮತ ಸಿದ್ಧಿ ತನಗೆಂದ ೧೭

ಕೋಗಿಲೆಯು ಠಾಯಕ್ಕೆ ಬಂದುದು
ಕಾಗೆಗಳ ಧುರಪಥವದಂತಿರ
ಲಾಗಳಬುಜಾಸನನ ಸಾರಥಿತನವದೇನಾಯ್ತೊ
ಹೋಗಲದು ಸಾರಥ್ಯಕಾಯತ
ವಾಗಿ ಬಂದು ವಿರಿಂಚ ಮಕುಟವ
ತೂಗಿದನು ಹೊಗಳಿದನು ತ್ರಿಪುರ ನಿವಾಸಿಗಳ ಬಲುಹ ೧೮

ಹುಸಿಯೆ ಬಳಿಕದು ಸಕಲ ಜಗವೊಂ
ದೆಸೆ ಪುರತ್ರಯ ದೈತ್ಯ ಭಟರೊಂ
ದೆಸೆ ಮಹಾದೇವನುತ ಕಮಲಜನೇರಿದನು ರಥವ
ಸಸಿನೆ ವಾಘೆಯ ತಿದ್ದಿ ತುರಗ
ಪ್ರಸರವನು ಬೋಳೈಸಿ ರಥವನು
ದೆಸೆದೆಸೆಗೆ ಹೊಳಸಿದನು ಉಳಿವಡಿಸಿದ ಮಹಾರಥವ ೧೯

ದೇವ ಬಿಜಯಂಗೈವುದೆನೆ ದಿವಿ
ಜಾವಳಿಗಳುಬ್ಬರದ ಬೊಬ್ಬೆಯ
ಡಾವರದಲೇರಿದನು ಧೂರ್ಜಟಿ ವೇದಮಯ ರಥವ
ಮಾವ ಕೇಳದುಭುತವನೀ ವಿ
ಶ್ವಾವನೀತಳ ರಥ ರಥಾಂಗ
ಗ್ರಾವ ತತಿ ನುಗ್ಗಾಯ್ತು ಮುಗ್ಗಿತು ತೇರು ನಿಮಿಷದಲಿ ೨೦

ಕಂದುರೆ ತಲೆಕೆಳಗಾದುದಿಳೆಯೆ
ದ್ದುದು ರಸಾತಳಕವರ ಭಾರಕೆ
ಕೆದರಿದವು ಕುಲಗಿರಿಯ ಹೂಟದ ಸಂಚ ದೆಸೆದೆಸೆಗೆ
ಕುದಿದುದಮರ ವ್ರಾತ ಸಂತಾ
ಪದಲಿ ವಿತಳಕೆ ಹಾಯ್ದು ನಿಮಿಷಾ
ರ್ಧದಲಿ ಹೆಗಲಿಂದೆತ್ತಿದನು ಹರಿ ವೃಷಭ ರೂಪಿನಲಿ ೨೧

ಅದ್ದ ರಥ ಹರಿಯುರವಣೆಗೆ ಚಿಗಿ
ದೆದ್ದು ಸಮವಾಯ್ತುಭಯ ಪುಟ ನೆಗೆ
ದೆದ್ದು ವಳಯುವ ಕೊಡಹಿ ನಿಂದವು ವೇದವಾಜಿಗಳು
ಎದ್ದುದೋ ರಥ ಖಳ ಮನೋರಥ
ವದ್ದುದೋ ಮುಝು ಪೂತುರೆನುತಂ
ಬ್ಬೆದ್ದುದಮರ ಕದಂಬ ಭಾರಿಯ ಭುಜದ ಬೊಬ್ಬೆಯಲಿ ೨೨

ಪ್ರಣವ ನಾದಾ ಹತಿಗೆ ಗತಿಯಲಿ
ಕುಣಿದವಗ್ಗದ ವೇದಹಯ ಹ
ಲ್ಲಣೆಯ ಹೇಷಿತ ರವಕೆ ಹೆದರಿತು ರಾಕ್ಷಸ ವ್ರಾತ
ಗಣಸಮೂಹದ ಚೂಣಿಯಲಿ ಸುರ
ಗಣ ಸುರಾರಿಗಳೂರ ಮುತ್ತಿತು
ಕೆಣಕಿದರು ಕಾಳೆಗವನಸುರರ ಥಟ್ಟು ಕಳವಳಿಸೆ ೨೩

ಭಟರು ವಿದ್ಯುನ್ಮಾಲಿಯಂದು ಲಟ
ಕಟಿಸಿ ನೂಕಿತು ತಾರಕಾಕ್ಷನ
ಚಟುಳ ಹಯ ಬಲ ಹೊಕ್ಕು ಹೊಯ್ದುದು ಬಿಟ್ಟ ಸೂಠಿಯಲಿ
ಲಟಕಟಿಸೆ ಸುರಸೇನೆ ಬಲು ಗಜ
ಘಟೆಗಳೌಕಿತು ದೈತ್ಯ ಸುರ ಸಂ
ಘಟಿತ ಸಮರವನೇನನೆಂಬೆನು ಮಾವ ಕೇಳೆಂದ ೨೪

ಹೊಯ್ದುದಮರರನಸುರರಗ್ಗದ
ಕೈದುಕಾರರು ಮತ್ತೆ ನೂಕಿತು
ಮೈದೆಗೆಯಲೊಡವೆರಸಿ ನೂಕಿತು ಬೇಹ ಬೇಹವರು
ಬೈದರಿಂದ್ರನನಿಂದುಮೌಳಿಗೆ
ನೆಯ್ದ ರಥ ನುಗ್ಗಾಯ್ತು ನಾಳವ
ಕೊಯ್ದರೋ ಹುಗ್ಗಿಗರೆನುತೊರಲಿದುದು ಸುರಸ್ತೋಮ ೨೫

ಹೊಗಲಿ ಸಮರಕೆ ಸ್ವಾಮಿದ್ರೋಹರು
ತೆಗೆಯಬೇಡೋ ಬೆನ್ನ ಲಾಂಕೆಗೆ
ಜಗದೊಡೆಯನೋ ಘಡ ಘಡಂಜದಿರೆನಲು ಸುರರಾಜ
ಉಗಿದ ಖಡುಗದ ತಿರುವಿನಂಬಿನ
ಬಿಗಿದ ಬಿಲ್ಲಿನ ಸುರಪನಿದಿರಿನೊ
ಳಗಣಿತಾಮರ ಭಟರು ಹೊಕ್ಕುದು ದೈತ್ಯಬಲದೊಳಗೆ ೨೬

ಮೊಲನ ಮರಿ ಕೈವೊಯ್ದು ನಕ್ಕುದು
ಹುಲಿಯೊಡನೆ ಗಡ ಶಿವಶಿವಾ ವೆ
ಗ್ಗಳೆಯರು ವಿಗ್ರಹದಲರಿವೆವು ಕಂಡು ಕೈಗುಣವ
ಹುಲುಪರೆಯ ದೇವಾಳಿ ತ್ರಿಪುರದ
ನೆಲನ ಮುಟ್ಟಿತು ನಾಯ್ಗಳಿರ ಮುಂ
ದಲೆಯ ಕೊಯ್ ಕಡಿ ಬೆರಳನೆಂದರು ಖಳರು ತಮ್ಮೊಳಗೆ ೨೭

ಕಾದ ಲೋಹದ ಹಳಿಯವೊಲು ಕೆಂ
ಪಾದವಸುರರ ಮೋರೆಗಳು ತಿದಿ
ಯೂದುಗಿಚ್ಚಿನ ಹೊದರಿನಂತಿರೆ ಬಿಡದೆ ಭುಗಿಲಿಡುತ
ಸೇದುವೆರಳಿನ ತಿರುವಿನಂಬಿನ
ವಾದಿನೆಸುಗೆಯ ಬಿರುದರಗ್ಗದ
ಕೈದುಕಾರರು ಕೆಣಕಿದಮರರ ಹೊಟ್ಟ ತೂರಿದರು ೨೮

ಮುರಿದುದಿದು ಕಲ್ಪಾಂತ ವಹ್ನಿಯು
ಸೆರೆಯ ಬಿಟ್ಟರೊ ಶಿವಶಿವಾ ಖಳ
ರುರುಬೆ ಘನ ನಾವೇಕೆ ರಣವೇಕವರ ಕೂಡೆನುತ
ಒರಲುವಮರರ ಬಾಯಿ ಕೈಗಳ
ಮೊರೆಯ ತೆಗಸಿ ಮಹಾ ಗಣಂಗಳೊ
ಳುರುವ ನಂದೀಶ್ವರನು ಹೊಕ್ಕನು ಹೊಯ್ದು ದಾನವರ ೨೯

ದಿಂಡುಂದರಿದನು ದಾನವರ ಕಡಿ
ಖಂಡ ಮಯಮಾಯ್ತವನಿ ರಕುತದ
ದೊಂಡೆಗೆಸರಿನೊಳದ್ದುದಗಣಿತ ರಥಗಜಾಶ್ವಚಯ
ಹಿಂಡೊಡೆದು ಹೇರಾಳ ರಕ್ಕಸ
ದಿಂಡೆಯರು ಧಿಮ್ಮೆನಲು ಹೊಯ್ದರು
ಖಂಡ ಪರಶುವಿನಾಳು ಹೊಯ್ದನು ಸಾಲಹೆಣ ಹರೆಯೆ ೩೦

ಅರನೆಲೆಯ ಮುರಿದಿಟ್ಟಣಿಸಿ ತಲೆ
ವರಿಗೆಯಲಿ ಹೊಕ್ಕೌಕಿ ದುರ್ಗದ
ಹಿರಿಯ ಹುಲಿಮುಖದೊಳಗೆ ಹೊಯ್ದರು ಬೇಹಬೇಹವರ
ಅರಸ ಕೇಳೈ ದೈತ್ಯ ಭಟರ
ಚ್ಚರಿಯ ಮಾಡಿದರಳಿದವರನೆ
ಚ್ಚರಿಸಿದರು ಮಯವಿರಚಿತಾಮೃತ ಸಲಿಲ ಕೂಪದಲಿ ೩೧

ಮಯನ ಬಿನ್ನಾಣವನು ದೇವ
ತ್ರಯುವರಿದುದಿದು ತೀರಲಸುರರ
ಲಯುವೆನುತ ಹರಿ ಧೇನುವಬುಜಾಸನನು ಕರುವಾಗಿ
ಭಯವಿಹೀನರು ಹೊಕ್ಕರಾ ಬಾ
ವಿಯನು ಬತ್ತಿಸಿ ಬಳಿಕ ದೈತ್ಯರ
ಜಯುವ ಮುರಿದರು ಮೋಹನದ ಬೌದ್ಧಾವತಾರದಲಿ ೩೨

ಭವನ ಭಕಂತಿಯು ಬಿಡಿಸಿದರು ಶಾಂ
ಭವ ಸುಸಿದ್ಧಾಂತವನು ಬೌದ್ಧ
ವ್ಯವಹರಣೆಗಳ ಮಾಯೆಯಲಿ ಕೆಡಹಿದರು ಕಪಟದಲಿ
ಯುವತಿಯರು ಪರಪುರುಷ ಯೋಗ
ಪ್ರವರ ದೀಕ್ಷಿತರಾಯ್ತು ಬೌದ್ಧನ
ವಿವಿಧ ಮಾಯೆಗೆ ಮಾರುವೋದುದು ಮನ ಸುರಾರಿಗಳ ೩೩

ಹರಿ ಸರೋಜಾಸನರು ಶೂಲಿಯ
ಹೊರೆಗೆ ಬಂದರು ದೇವ ದೈತ್ಯರ
ಪುರವಧರ್ಮದ ಪೇಟೆಯಾದುದು ನಯನಪಾವಕನ
ಕರೆದು ಬೆಸಸುವಡಿದು ಸಮಯವೀ
ಸುರರ ಸಲಹುವ ಚಿತ್ತವುಳ್ಳರೆ
ಕರುಣಿ ಬಿಜಯಂಗೈವುದೆಂದರು ಪಾರ್ವತೀಪತಿಗೆ ೩೪

ಬಿಲ್ಲ ತುಡುಕಿದನಭವನೆಡಬಲ
ದಲ್ಲಿ ಜಯಜಯಜಯಜಯಧ್ವನಿ
ಘಲ್ಲಿಸಿತ್ತೀರೇಳು ಭುವನ ಶ್ರವಣ ವೀಧಿಗಳ
ಭುಲ್ಲವಿಸಿ ಹಯ ಪದಸಮೂಹವ
ಚೆಲ್ಲಿದವು ಸಕ್ರಮದ ಪಾಳಿಯ
ಪಲ್ಲವಿಕೆ ಪರಿವಡೆದುದಮಳಪ್ರಣವಮಯವಾಗಿ ೩೫

ಅಡಿಗಡಿಗೆ ಚಮ್ಮಟಿಗೆಯುಳ್ಳಿಯ
ತುಡುಕೆ ಕುಣಿದವು ವೇದಹಯ ಬಲ
ನೆಡ ಪುರಃಪಶ್ಚಿಮದಲೆರಗುವ ಮಂತ್ರಕೋಟಿಗಳ
ನುಡಿಯಲರಿದಾಕಾಶ ಸರಸಿಯೊ
ಳಿಡಿದ ತಾವರೆಮುಗುಳುಗಳೊ ಸುರ
ಪಡೆಯೊಳೊತ್ತಿದ ಮುಗಿದ ಕೈಗಳೊ ಚಿತ್ರವಾಯ್ತೆಂದ ೩೬

ಪರಮ ಶ್ರುತಿ ವೇದಾಂಗ ಮಂತ್ರೋ
ತ್ಕರ ಧರಿತ್ರಿ ಕುಲಾದ್ರಿ ಸಸಿ ಭಾ
ಸ್ಕರ ಸುರೋರಗ ಜಲಧಿ ನದಿ ನಕ್ಷತ್ರ ರಾಶಿಗಳು
ಸರಸಿರುಹಭವ ವಿಷ್ಣು ವಿವಿಧಾ
ಧ್ವರ ಮುನೀಂದ್ರ ಗ್ರಹವು ಸಚರಾ
ಚರವುಘೇ ಎಂದೆರಗುತಿರ್ದುದು ಶಿವನ ಬಳಸಿನಲಿ ೩೭

ಒದಗಿತೀ ಹೇಳಿದ ಸಮಸ್ತ
ತ್ರಿದಶಸಚರಾಚರವು ತಮ್ಮಂ
ಗದಲಿ ರಚಿಸಿದ ವಿಶ್ವಕರ್ಮನ ಕೃತ ನಿಯೋಗದಲಿ
ಅದು ಬಳಿಕ ನಿರ್ಜರ ಸಮೂಹಾ
ಭ್ಯುದಯವೈಸಲೆ ಧನುವ ಕೊಂಡನು
ಮದನರಿಪು ತಿರುಹಿದನು ಬೆರಳಲಿ ಪಾಶುಪತ ಶರವ ೩೮

ಕೃತಕವೋ ದಿಟವೋ ದುರಂತರ
ಶ್ರುತಿಗಳರಿಯುವು ನಮ್ಮ ಮಿಡುಕುವ
ಮತಿಯ ಪಾಡೇ ನಿಮಿಷಕಬುಜಭವಾಂಡ ಕೋಟಿಗಳ
ಸ್ಥಿತಿಗತಿಯನಗ್ಗಳದ ನಯನಾ
ಹುತಿಯ ಮಾಡುವ ತ್ರಿಪುರಹರ ಸಂ
ಗತಿಯ ಸಮಯವ ಹಾರಿದನು ಸುರವರುಷ ಸಾವಿರವ ೩೯

ಕೂಡಿದವು ಪುರ ಮೂರು ನಿಮಿಷದೊ
ಳೀಡಿರಿದುದುರಿ ನಯನ ವಹ್ನಿಯು
ಕೂಡಿ ಹುರಿಗೊಂಡೌಕಿ ಹರಿದುದು ಪಾಶುಪತ ಬಾಣ
ಝಾಡಿ ಹೊರಳಿಯ ಹೊಗೆಯ ಜೋಡಿಯ
ನೀಡು ನಾಲಗೆ ಪುರದ ಸುತ್ತಲು
ಕೂಡೆ ವೇಢಯವಾಯ್ತು ಹರಹಿನ ಕಿಡಿಯ ಗಡಣದಲಿ ೩೪

ಕಟ್ಟಿತುರಿ ದೆಸೆ ನಾಲ್ಕರಲಿ ಬೆ
ನ್ನಟ್ಟಿ ಹೊಯ್ದುದು ಬಿನುಗುಗಳ ಜಗ
ಜಟ್ಟಿಗಳನೊರಗಿಸಿತು ಮರುಗಿಸಿತಸುರ ನಾರಿಯರ
ದಿಟ್ಟರುರಿದುದು ವೀರರಸುಗಳ
ಬಿಟ್ಟರಭವದ್ರೋಹಿಗಳು ನೆರೆ
ಕೆಟ್ಟ ಕೇಡಿಂಗಾರು ಮರುಗುವರರಸ ಕೇಳೆಂದ ೪೧

ಸರಳ ಮೊನೆಯಲಿ ಸಿಡಿದ ಕಿಡಿಯೊಂ
ದೆರಡರಲಿ ಬೆಂದುದು ಪುರತ್ರಯ
ವರಸ ಕೇಳೈ ಬಳಿಕ ಬಾಣದ ಬಾಯಿಧಾರೆಗಳ
ಹರನ ನಯನದ ಕಿಚ್ಚು ಕಾಣದು
ಪುರವನಾ ಖಾತಿಯಲಿ ಭೇದಿಸಿ
ಮುರಿಮುರಿದು ಸುಡತೊಡಗಿತಬುಜಭವಾಂಡ ಮಂಡಲವ ೪೨

ಎಲೆ ಚತುರ್ದಶ ಜಗವನುರಿಯು
ಪ್ಪಳಿಸಿತೇ ಬೆಂದುದು ಸುರೌಘದ
ಗೆಲವು ಕರೆಯಾ ಕಲ್ಪಮೇಘವನುರಿಯ ಮಾಣಿಸಲಿ
ಬಲುಕಣೆಗಳಲ್ಲಾ ಜನಾರ್ದನ
ನಳಿನಭವರಾವೆಡೆಯೆನುತ ಕಳ
ವಳಿಸಿದುದು ಮೊರೆಯಿಟ್ಟುದಭವನ ಮುಂದೆ ಭುವನಜನ ೪೩

ಅರಿಪುರತ್ರಯ ದಹನ ಕರ್ಮ
ಸ್ಫುರಣವಸ್ಮತ್ಕಾರ್ಯವದು ಗೋ
ಚರಿಸಿತಲ್ಲಿಂ ಮೇಲಣುಚಿತಾನುಚಿತ ಕೃತ್ಯವನು
ಕರುಣಿ ನೀನೇ ಬಲ್ಲೆ ಜನ ಸಂ
ಹರಣ ಕಾಲವೊ ಮೇಣು ರಕ್ಷಾ
ಕರಣ ಕಾಲವೊ ದೇವ ಎಂದೊರಲಿದುದು ಭುವನಜನ ೪೪

ತ್ರಾಹಿ ಮದನಾಂತಕ ಪುರತ್ರಯ
ದಾಹ ಹರ ಶಂಕರ ಮಹೇಶ
ತ್ರಾಹಿ ಮೃತ್ಯುಂಜಯ ಪಿನಾಕಿ ತ್ರಾಹಿ ಲೋಕೇಶ
ದ್ರೋಹಿಗಳು ಧೂಳಾಯ್ತು ಬಳಿಕಿನೊ
ಳೀ ಹದನು ಬಂದಿದೆ ಜಗತ್ರಯ
ರೂಹುಗೆಡುತಿದೆ ದೇವ ಎಂದುದು ಸಕಲ ಭುವನಜನ ೪೫

ಕರುಣರಸದಲಿ ನನೆದು ನಗೆಯಂ
ಕುರಿಸಲಾಜ್ಞಾಹಸ್ತದಲಿ ಶಂ
ಕರನ ಹೂಂಕರಣೆಯಲಿ ತಳಿತುರಿ ತಗ್ಗಿತಲ್ಲಲ್ಲಿ
ಶಿರವ ತಡಹುತ ದೇವತತಿ ಪುರ
ಹರನ ಬೀಳ್ಕೊಂಡರು ಮಹಾರಥ
ಹರಿದು ನಿಜ ಸಂಸ್ಥಾನ ಸಂಗತವಾಯ್ತು ನಿಮಿಷದಲಿ ೪೬

ಎಂಟನೆಯ ಸಂಧಿ

ಸೂ. ಪೃಥಿವಿಪತಿ ಮಾದ್ರೇಶನನು ಸಾ
ರಥಿಯ ಮಾಡಿದನೊಲವು ಮಿಗಲತಿ
ರಥ ಭಯಂಕರ ಭಾನುಸುತನಾಹವಕೆ ನಡೆತಂದ

ಹರನ ಬೀಳ್ಕೊಂಡಖಿಳ ದಿವಿಜರು
ಹರೆದುದೀ ಪರಿ ಕಮಲಭವನೀ
ಶ್ವರನ ಸಾರಥಿಯಾಗೆ ಸಾರಿದುದಮರರಭ್ಯುದಯ
ಹರಿಯು ಸಾರಥಿತನದಿ ಜಯವಂ
ಕುರಿಸಿತವರಿಗೆ ನಿಮ್ಮ ಕೃಪೆಯಲಿ
ಕುರುಬಲಕೆ ಗೆಲವಾದಡೊಳ್ಳಿತು ಮಾವ ಕೇಳೆಂದ ೧

ಹರನು ಬಿಲುವಿದ್ಯವನು ಕೊಡುತವೆ
ಪರಶುರಾಮಂಗೆಂದನಧಮರಿ
ಗೊರೆಯದಿರು ಸತ್ಪಾತ್ರಕಿದನಾದರಿಸಿ ಕಲಿಸೆಂದ
ಸುರರ ಮೆಚ್ಚಿದ ರಾಮನೀತನ
ಕರೆದು ಗರುಡಿಯ ಹೊಗಿಸಿದನು ಕಡು
ಗರುವನೀ ರಾಧೇಯನಧಮನೆ ಮಾವ ಕೇಳೆಂದ ೨

ಸೂತಕುಲಸಂಭವನೆ ಭುವನ
ಖ್ಯಾತ ಕರ್ಣನು ಸಾಕಿದಾತನು
ಸೂತನಾದಡೆ ಮಾವ ಕೇಳನ್ವಯಕೆ ಹಳಿವುಂಟೆ
ಸ್ವಾತಿಯುದಕದೊಳಾದ ಮೌಕ್ತಿಕ
ವ್ರಾತಕಯ್ಯನೆ ಚಿಪ್ಪು ನಿಮಗಿ
ನ್ನೇತಕೀ ಸಂದೇಹ ರವಿಸುತ ಸೂತನಲ್ಲೆಂದ ೩

ಈ ದುರಾಗ್ರಹ ನಿನ್ನ ಚಿತ್ತದೊ
ಳಾದುದೇ ತಪ್ಪೇನು ಕೋಗಿಲೆ
ಯಾದರಿಸಿದಡೆ ಬೇವು ಮಾವಹುದಾದಡೆಮಗೇನು
ಕಾದಿ ಗೆಲುವುದು ಭಾರಿ ಗುರು ಭೀ
ಷ್ಮಾದಿ ಭಟರೇನಾದರೈ ತಾ
ನಾದುದಾಗಲಿ ನಾವು ಸಾರಥಿಯಾದೆವೇಳೆಂದ ೪

ನಿಮ್ಮ ವಿಜಯ ಶ್ರೀಯ ಕಡೆಗ
ಣ್ಣೆಮ್ಮ ಮುಖದಲಿ ಮುರಿದುದಾದಡೆ
ನಮ್ಮ ಕೊರತೆಯದೇಕೆ ಕರಸೈ ಸೂತನಂದನನ
ನಮ್ಮ ಹೇಳಿಕೆ ಯಾವುದದನೀ
ತಮ್ಮ ಮೀರಿದು ನಡೆದನಾದಡೆ
ನಮ್ಮ ವಾಘೆಯ ಬೀಳುಕೊಡುವೆವು ರಾಯ ಕೇಳೆಂದ ೫

ಹೊತ್ತ ದುಗುಡವ ಹಾಯ್ಕಿ ಕೈವಿಡಿ
ದೆತ್ತಿ ಕರ್ಣನ ಕೊಟ್ಟು ವೈಗಳ
ಲೆತ್ತು ಗುಡಿಗಳ ರೋಮ ಪುಳಕದ ಪೂರ್ಣ ಹರುಷದಲಿ
ಬತ್ತಿತಂತಸ್ತಾಪಜಲನಿಧಿ
ಚಿತ್ತದುರು ಸಂದೇಹ ತರುವಿನ
ಬಿತ್ತು ಕರಿವೊಳೆವೋಯ್ತು ನಿನ್ನ ಮಗಂಗೆ ನಿಮಿಷದಲಿ ೬

ಬೀಳುಕೊಂಡನು ಶಲ್ಯನನು ಭೂ
ಪಾಲನಿತ್ತಲು ಕರ್ಣನಾಯುಧ
ಶಾಲೆಯಲಿ ಶುಚಿಯಾಗಿ ಶಸ್ತ್ರಾಸ್ತ್ರವನು ಪೂಜಿಸಿದ
ಸಾಲದೀವಿಗೆಗಳನು ಶಸ್ತ್ರ
ಜ್ವಾಲೆ ಮಿಕ್ಕವು ತೀಕ್ಷ್ಣಧಾರಾ
ಭೀಳವಿಕ್ರಮ ವಿಸ್ಫುಲಿಂಗಿತವಾದವಡಿಗಡಿಗೆ ೭

ಕುರಿಯ ಹಣಿದದ ಕೋಳಿ ಕೋಣನ
ಮುರಿದಲೆಯ ಮಿಾಸಲಿನ ರಕುತದ
ದುರುದುರಿಪ ದಂಡೆಯಲಿ ಕಲಸಿದ ಕೂಳ ಮುದ್ದೆಗಳ
ಹೊರಗೆ ಬಡಿಸಿದ ಭೂತಬಲಿ ಬೊ
ಬ್ಬಿರಿತದೊಡನುಬ್ಬೇಳ್ವ ಲಗ್ಗೆಯ
ಹರೆಗಳಬ್ಬರವಾಯ್ತು ಕರ್ಣನ ಶಸ್ತ್ರಪೂಜೆಯಲಿ ೮

ವಿರಚಿಸಿತು ಶಸ್ತ್ರಾಸ್ತ್ರ ಪೂಜಾ
ಪರಿಸರಣ ರವಿಸೂನು ದರ್ಭಾಂ
ಕುರದ ಶಯನಸ್ಥಾನದಲಿ ಮಾಡಿದನು ಜಾಗರವ
ಕುರು ನೃಪಾಲನ ಪಾಳೆಯದೊಳಾ
ಯ್ತಿರುಳು ಮನೆಮನೆಗಳಲಿ ಶಸ್ತ್ರೋ
ತ್ಕರ ಸಮಾರಾಧನೆಯೊಳಿರ್ದುದು ಕೂಡೆ ನೃಪಕಟಕ ೯

ಸವೆದುದಿರುಳರುಣೋದಯದಲಾ
ಹವದ ಸಂಭ್ರಮರಭಸವೆದ್ದುದು
ವಿವಿಧ ಬಲ ಭಾರಣೆಯ ಭುಲ್ಲವಣೆಯ ಭಡಾಳದಲಿ
ತವಕಿಸುತ ಬಿಗಿ ವಾರುವನ ತಾ
ಸವಗವನು ಬಲ್ಲೆಹವ ಸೀಸಕ
ಕವಚಗಳನೆಂಬಬ್ಬರಣೆ ರಂಜಿಸಿತು ರಾವ್ತರಲಿ ೧೦

ಬಿಡಂ ಗಜವ ಬಿಗಿ ರೆಂಚೆಗಳ ತೆಗೆ
ದಡಿಯ ಹಾಯಿಕು ಗುಳವ ತಾ ಮೊಗ
ವಡವ ಕೊಡು ಪಟ್ಟೆಯವ ಕೈಯಲಿ ಬೀಸು ಚೌರಿಗಳ
ತಡವಿದೇನೋ ಸಾಯಿ ಘಡಿ ಘಡ
ಕೆಡೆಯೆನುತ ತಮ್ಮೊಬ್ಬರೊಬ್ಬರ
ಜಡಿಯಲಬ್ಬರವಾದುದಾರೋಹಕರ ಕೇರಿಯಲಿ ೧೧

ಕೀಲ ತೆಗೆಯಂಚ್ಚುಗಳ ಹೆರೆ ಬಲು
ಗಾಲಿಗಳ ಜೋಡಿಸು ಪತಾಕಾ
ಜಾಲವನು ನಿಲಿಸೀಸ ಬಲಿ ಬಲುಮಿಣಿಯ ಬಿಗಿಯೆನುತ
ಮೇಲೆ ಮೇಲಬ್ಬರದ ಘೋಳಾ
ಘೋಳಿ ಘಲ್ಲಿಸೆ ದೆಸೆಯಲತಿರಥ
ಜಾಲ ಕವಿದುದು ಕದನಕೌತೂಹಲರ ಕೇರಿಯಲಿ ೧೨

ನೀಡು ಬಿಲು ಬತ್ತಳಿಕೆಯನು ನಡೆ
ಜೋಡ ತೆಗೆ ತಾ ಸವಳವನು ರಣ
ಖೇಡನೇ ಘಡ ಘಾಯವನು ಬಿಗಿ ಮದ್ದನರೆಯೆನುತ
ಕೂಡೆ ತಮತಮಗಾಹವದ ಖಯ
ಖೋಡಿಯಿಲ್ಲದೆ ಸುಭಟರಬ್ಬರ
ಝಾಡಿ ಮಸಗಿತು ಕದನದಲಿ ಕಾಲಾಳ ಕೇರಿಯಲಿ ೧೩

ಬಿರಿದುದಬುಜಭವಾಂಡವೆನೆ ಭೋಂ
ಕರಿಸಿದವು ನಿಸ್ಸಾಳತತಿ ನಿ
ಬ್ಬರದ ಬಿರುದನು ಬೀರುತಿರ್ದವು ಗೌರುಗಹಳೆಗಳು
ಎರಲು ಸುಳಿದುದು ದೀಪಶಿಖಿ ಪರಿ
ಹರಿಸಿದತಿಬಲದಬ್ಬರದ ನಿ
ಷ್ಠುರತೆಗಂಜದೆ ಮಾಣದೆನೆ ಹೆರಹಿಂಗಿತಾ ರಜನಿ ೧೪

ಅರಸ ಕೇಳಭ್ಯುದಿತವಾದುದು
ಸರಸ ಕೈರವ ರಾಜಿ ಕೋಮಲ
ಸರಸಿರುಹವನವಾದುದಾಕ್ಷಣ ಸುರಭಿ ನಿರ್ಮುಕ್ತ
ಕಿರಣ ತೋಮರ ದಕ್ಷಿಣೋರು
ಸ್ಫುರಣ ತಿಮಿರ ಮೃಗೀಕದಂಬಕ
ತರಣಿ ನೂಕಿದನುದಯಶೈಲಕೆ ರತುನಮಯ ರಥವ ೧೫

ಉಲಿವ ಮಂಗಳಪಾಠಕರ ಕಳ
ಕಳಿಕೆ ಮೆರೆಯಲು ಹೊಳೆವ ಹೊಂಬ
ಟ್ಟಲಲಿ ಸೂಸಿದನರ್ಘ್ಯಜಲವನು ಜನಕನಿದಿರಿನಲಿ
ಲಲಿತ ಮಂತ್ರಾಕ್ಷತೆಗಳನು ಕರ
ತಳದೊಳಾಂತು ಮಹೀಸುರರಿಗ
ಗ್ಗಳೆಯನಿತ್ತನು ಧೇನುಮಣಿಕನಕಾದಿ ವಸ್ತುಗಳ ೧೬

ವರ ನಿಭಾರಿಯ ಬಳವಿನಲಿ ಬಲ
ಮುರಿಯ ಬಿಗಿದನು ಪದಮುಖಕೆ ಮುಂ
ಜೆರಗ ಬಿಟ್ಟನು ಬಿಗಿದ ಬದ್ದುಗೆ ದಾರ ಗೊಂಡೆಯವ
ಕಿರಣ ಲಹರಿಯ ವಜ್ರಮಾಣಿಕ
ಪರಿರಚಿತ ಭುಜಕಂಠಕರ್ಣಾ
ಭರಣ ಚರಣದ ಖಡೆಯದಲಿ ರಂಜಿಸಿದನಾ ಕರ್ಣ ೧೭

ದಿನ ಗಣನೆ ಹದಿನೆಂಟು ಕೋಟಿಯ
ಕನಕವಂದಿನ ದಿನದಿ ಚೆಲ್ಲಿದ
ನನುಪಮಿತ ಧನ ರತುನ ಭಂಡಾರವನು ತೆಗೆತೆಗೆಸಿ
ಮನದಣಿಯೆ ಯಾಚಕರಿಗಿತ್ತುದ
ನೆನಗೆ ಬಣ್ಣಿಸಲಳವೆ ಕೇಳೈ
ಜನಪ ಕರ್ಣನದೇನ ನಿಶ್ಚಯಿಸಿದನೊ ಮನದೊಳಗೆ ೧೮

ಹೊಳೆಹೊಳೆದವಾಭರಣ ತಾರಾ
ವಳಿಗಳಂತಿರೆ ಪೂರ್ಣ ಶಶಿಮಂ
ಡಲದವೊಲು ತನುಕಾಂತಿ ತಿವಿದುದು ನಿಖಿಳದಿಗಂತಟವ
ತಳಿತ ವಿಕ್ರಮ ಸುಪ್ರತಾಪೋ
ಜ್ವಲಿತಸೂರ್ಯಪ್ರಭೆ ಜಗತ್ರಯ
ದೊಳಗೆ ಝಳಪಿಸೆ ಕರ್ಣನೆಸೆದನು ದಿವ್ಯತೇಜದಲಿ ೧೯

ದೇವ ಗುರು ವಿಪ್ರರಿಗೆ ಬಹು ಸಂ
ಭಾವನೆಯ ಮಾಡಿದನು ಶಸ್ತ್ರಾ
ಸ್ತ್ರಾವಳಿಯ ತರಿಸಿದನು ತುಂಬಿಸಿದನು ವರೂಥದಲಿ
ರಾವುತರಿಗಾರೋಹಕರಿಗೆ ಭ
ಟಾವಳಿಗೆ ರಥಿಕರಿಗೆ ಚೆಲ್ಲಿದ
ನಾ ವಿವಿಧ ಸೌಗಂಧ ಭಾವಿತ ಯಕ್ಷ ಕರ್ದಮವ ೨೦

ನಡೆದು ಬಂದನು ರಥಕೆ ದೆಸೆ ಕಂ
ಪಿಡುಂತ ನೆರೆದ ಮಹಾಪ್ರಧಾನರ
ನಡುವೆ ಚಲಿಸುವ ಚಾತುರಂಗದ ಸುಳಿಯ ಸಂದಣಿಯ
ಒಡನೆ ನೆಲನಳ್ಳಿರಿಯೆ ವಾದ್ಯದ
ಗಡಣ ಮೊರೆದುದು ಪಾಠಕರ ಗಡ
ಬಡಿಯ ಕಳರವ ಬಗಿದುದಬುಜಭವಾಂಡಮಂಡಲವ ೨೧

ಅತಿರಭಸದಿಂದಾಯ್ತು ಸೇನಾ
ಪತಿಯ ಪಯಣವಲಾ ಎನುತ ಗುರು
ಸುತ ಶಕುನಿ ಕೃತವರ್ಮ ಕೃಪ ದುಶ್ಶಾಸನಾದಿಗಳು
ವಿತತಸನ್ನಾಹದಲಿ ಕುರುಭೂ
ಪತಿಸಹಿತ ಹೊರವಂಟು ಭಾಸ್ಕರ
ಸುತನ ಸನ್ನೆಯ ಮೇಲೆ ನಡೆದರು ಮುಂದೆ ಸಂದಣಿಸಿ ೨೨

ಬಳಿಯ ನೆಲನುಗ್ಗಡಣೆಗಳ ವೆ
ಗ್ಗಳೆಯ ಸುಭಟರ ಮೇಳದಲಿ ಬಂ
ದಿಳಿದು ದಂಡಿಗೆಯಿಂದ ನಸುನಗುತೇರಿದನು ರಥವ
ಚಳಹಯಂಗಳು ಹುರಿಯ ವಾಘೆಯ
ನಳವಡಿಸೆ ಬಲನೆಡಕೆ ವಾಜಿಯ
ಸುಳಿಸಿ ಸಾರಥಿತನವ ತೋರಿದನಂದು ಕಲಿಶಲ್ಯ ೨೩

ಬಳಿಯ ಪಾಯವಧಾರುಗಳ ಕಳ
ಕಳದೊಳಗೆ ರಥವೇರಿದನು ನೆಲ
ಹಿಳಿಯ ಹೇರಾಳಿಸಿತು ಬಹುವಿಧವಾದ್ಯನಿರ್ಘೋಷ
ತಳಿತವಮಳಚ್ಛತ್ರ ಚಮರಾ
ವಳಿಯ ಝಲ್ಲಿಯ ಪಟ್ಟಿಗಳ ನವ
ಪಳಹರ ಧ್ವಜ ದಂಡವೆತ್ತಿತು ವರ ರಥಾಗ್ರದಲಿ ೨೪

ಇಕ್ಕೆಲದ ರಾವುತರ ತೇರಿನ
ತೆಕ್ಕೆಗಳ ಗಜಘಟೆಯ ಕಾಲಾ
ಳಕ್ಕಜದ ನಿಸ್ಸಾಳ ಸೂಳಿನ ಲಗ್ಗೆದಂಬಟದ
ಉಕ್ಕಿತೋ ವಿಲಯಾಬ್ಧಿಯೆನೆ ಸಾ
ಲಿಕ್ಕಿ ನಡೆದುದು ಸೇನೆ ರಾಯನ
ಸಿಕ್ಕಿನವಸರದಾನೆ ನಿಜ ಪಾಳೆಯವ ಬೀಳ್ಕೊಂಡ ೨೫

ರಾಯ ಕೇಳೈ ಬಳಿಕ ಕಲಿರಾ
ಧೇಯ ಬರುತಿರೆ ತೋರಿದುತ್ಪಾ
ತಾಯತವನೇನೆಂಬೆನೈ ಶಿವಶಿವ ಮಹಾದೇವ
ವಾಯಸದ ತಡೆ ಭೂಮಿಕಂಪ ನಿ
ಜಾಯುಧಂಗಳ ಕಿಡಿ ಗಜಾಶ್ವನಿ
ಕಾಯ ರಥವಾಜಿಗಳ ಕಂಬನಿ ಕಾಣಲಾಯ್ತೆಂದ ೨೬

ಒದರಿದವು ನರಿ ಮುಂದೆ ಕರ್ಣನ
ಕುದುರೆಗಳು ಮುಗ್ಗಿದವು ಪರಿವೇ
ಷದಲಿ ಸಪ್ತಗ್ರಹದ ವಕ್ರತೆ ಸೂರ್ಯಮಂಡಲಕೆ
ಇದಿರಿನಲಿ ಬಿರುಗಾಳಿ ಧೂಳಿಯು
ಕೆದರಿ ಬೀಸಿತು ನಿಖಿಳಬಲ ಮು
ಚ್ಚಿದುದು ಕಂಗಳನವನಿಪತಿ ಕಂಡನು ಮಹಾದ್ಭುತವ ೨೭

ತೃಣಕೆ ಕೊಂಬನೆ ಕರ್ಣನಿದನಾ
ರೆಣಿಸುವರು ದುಷ್ಕರ್ಮಶೇಷದ
ಋಣನಿಬದ್ಧರು ಕಂಡು ಮಾಡುವುದೇನು ಕೌರವರು
ರಣಮನೋರಾಗದಲಿ ದಳಸು
ದಣಿಯ ನಿಲಿಸಿದನತಿರಥರ ಲಾ
ವಣಿಗೆಗೊಂಡನು ಕರ್ಣ ಪರಿವಾರಕ್ಕೆ ಕೈಮುಗಿದು ೨೮

ನೊಂದವರು ನಿಲಿ ಸ್ವಾಮಿಕಾರ್ಯಕೆ
ಹಿಂದುಗಳೆವರು ಮರಳಿ ಮನೆಗಳ
ಹಿಂದಣಾಸೆಯ ಹೇವ ಹರುಕರಿಗಿಂದು ಮಹನವಮಿ
ನಿಂದರೊಳ್ಳಿತು ನೃಪನ ದೆಸೆಯಲಿ
ಕಂದು ಕಲೆಯುಳ್ಳವರು ಕಾಳೆಗ
ವಿಂದು ಬೆಟ್ಟಿತು ಬೀಳುಕೊಂಬುದು ಭೀತಿ ಬೇಡೆಂದ ೨೯

ಓಡಿ ನಾಚಿಸುವವರು ನಿಲಿ ರಣ
ಖೇಡರೀಗಳೆ ಮರಳಿ ಮನವ
ಲ್ಲಾಡಿ ಮರುಗುವರೇಳಿ ಮರಣದಲಾವ ಫಲಸಿದ್ಧಿ
ಕೂಡುಗಲಕರು ನಿಲ್ಲಿ ಇಹಪರ
ಗೇಡಿಗರು ಹೆರಸಾರಿ ಗುಣದಲಿ
ಬೇಡಿಕೊಂಬೆನು ಖಾತಿಗೊಳ್ಳೆನು ಹೋಗಿ ನೀವೆಂದ ೩೦

ಸಂದ ಸುಭಟರು ಬನ್ನಿ ಸ್ವರ್ಗದ
ಬಂದಿಕಾರರು ಬನ್ನಿ ಮನದಿಂ
ಮುಂದೆ ಹೆಜ್ಜೆಯ ತವಕಿಗರು ಬಹುದೆನ್ನ ಸಂಗಾತ
ನೊಂದಡುಬ್ಬುವರಿತ್ತ ಬನ್ನಿ ಪು
ರಂದರನ ಸರಿಗದ್ದುಗೆಗೆ ಮನ
ಸಂದವರು ಹೋಗಿ ರಣವನೆಂದನು ಕರ್ಣ ನಿಜಬಲಕೆ ೩೧

ವೀರ ಭಟರಾಹವವ ಹೊಗಿ ಜ
ರ್ಝರರಿತ್ತಲು ನಡಯಿ ಕದನವಿ
ಚಾರಶೀಲರು ಮುಂದೆ ಹೋಗಿ ಮಹಾರಥಾದಿಗಳು
ಆರು ಬಲ್ಲರು ಸಮರ ಯಜ್ಞದ
ಸಾರವನು ಪಾಪಿಗಳಿರಕಟ ಶ
ರೀರವನು ಕೊಡಿ ಪಡೆಯಿ ಮುಕ್ತಿಯನೆಂದನಾ ಕರ್ಣ ೩೨

ರಾಯ ಕೇಳೈ ಕರ್ಪುರದ ತವ
ಲಾಯಿಗಳನೊಡೆದೊಡೆದು ಭಟರಿಗೆ
ಹಾಯಿಕಿದನಂಜುಳಿಗಳಲಿ ಮೊಗೆಮೊಗೆದು ಬೇಸರದೆ
ಸಾಯದಿಹರೇ ರಣದೊಳಗೆ ರಾ
ಧೇಯನೀ ಮನ್ನಣೆಗೆ ಬದುಕುವ
ನಾಯಿಗಿಹಪರವುಂಟೆ ಎಂದುದು ನಿಖಿಳ ಪರಿವಾರ ೩೩

ಕೇಳಿರೈ ಪರಿವಾರವಿಂದಿನ
ಕಾಳೆಗವಲೇ ನಮಗೆ ಭೀಷ್ಮರ
ಕೋಲಗುರುವಿನ ಹರಿಬವನು ಮನವಾರೆ ಹೊತ್ತೆವಲ
ಸೋಲವೋ ಕೌರವನ ಭಾಗ್ಯದ
ಕಾಲವೋ ವಿಧಿ ಬಲ್ಲದೆನ್ನಯ
ತೋಳ ಬಲುಹನು ಹಗೆಗೆ ತೋರುವೆನೆಂದನಾ ಕರ್ಣ ೩೪

ಆವ ತೋರಿಸಲಾಪನರ್ಜುನ
ದೇವನನು ರಿಪು ಬಲದೊಳಾತಂ
ಗೀವೆನೀ ಪದಕವನು ಖಡೆಯವ ವಜ್ರಮಾಣಿಕದ
ಆವನೀ ಫಲುಗುಣನ ತೇರಿನ
ಠಾವಿದೇ ಎಂದವಗೆ ಇದೆ ಮು
ಕ್ತಾವಳಿಯಲಂಕಾರವೆಂದನು ಕರ್ಣ ನಿಜಬಲಕೆ ೩೫

ನರನ ತೋರಿಸಿದವಗೆ ಶತ ಸಾ
ವಿರದ ಪಟ್ಟಣವರ್ಜುನನ ಮೋ
ಹರವಿದೇ ಎಂದವಗೆ ಕೊಡುವೆನು ಹತ್ತು ಸಾವಿರವ
ನರನ ತೆರಳಿಚಿ ತಂದು ತನ್ನೊಡ
ನರುಹಿದಗೆ ನೂರಾನೆ ಹಯ ಸಾ
ವಿರದ ವಳಿತವ ಬರಸಿ ಕೊಡುವೆನು ರಾಯನಾಣೆಂದ ೩೬

ತೋರಿರೈ ಫಲುಗುಣನನಿದಿರಲಿ
ತೋರಿರೈ ಸಿತಹಯನನಕಟಾ
ತೋರಿರೈ ವಿಜಯನನು ನಿಮಗೆಯು ಸ್ವಾಮಿಕಾರ್ಯವಲ
ತೋರಿ ಪಾರ್ಥನನವನ ನೆತ್ತರ
ಸೂರೆ ಶಾಕಿನಿಯರಿಗೆ ನಿಮಗುರೆ
ಸೂರೆಯೋ ಭಂಡಾರ ಕೌರವ ರಾಯನಾಣೆಂದ ೩೭

ನರನ ಶರಹತಿಗೆನ್ನ ತನು ಜ
ರ್ಝರಿತವಾಗಲಿ ನನ್ನ ಕಣೆಯಲಿ
ಬಿರಿಯಲಾತನ ದೇಹ ಖಾಡಾಖಾಡಿ ಯುದ್ಧದಲಿ
ಕರುಳು ಕರುಳಲಿ ತೊಡಕಿ ನೊರೆ ನೆ
ತ್ತರಲಿ ನೆತ್ತರು ಕೂಡಿ ಕಡಿಯಲಿ
ಬೆರಸಿ ಕಡಿ ಪಲ್ಲಟಿಸೆ ಕಾದುವೆನಿಂದು ಹಗೆಯೊಡನೆ ೩೮

ಸರಳು ಸರಳಿಂಗೊಮ್ಮೆ ರೋಮಾಂ
ಕುರದ ಗುಡಿಯಲಿ ರಕ್ತಜಲದಲಿ
ಕರುಳ ಹೂಮಾಲೆಯಲಿ ವೀರರಣಾಭಿಷೇಕವನು
ಧರಿಸಿ ವೈರಿಯ ಘಾಯಘಾಯದ
ಧರಧುರಕೆ ತನಿಹೆಚ್ಚಿ ಮನದು
ಬ್ಬರದಲಿರಿದಾಡಿದರೆ ದಿಟ ಕೃತಕೃತ್ಯ ತಾನೆಂದ ೩೯

ಅವನ ಮುಂದಲೆ ತನ್ನ ಕೈಯಲಿ
ಅವನ ಕೈಯಲಿ ತನ್ನ ಮುಂದಲೆ
ಅವನ ದೇಹದ ಛಾಯವೆನ್ನಯ ಛಾಯ ಚುಂಬಿಸುತ
ಅವನ ಖಡುಗದಲೆನ್ನ ಮೈ ನಾ
ತಿವಿದ ಖಡ್ಗಕೆ ನರನ ಮೈ ಲವ
ಲವಿಸಲಡಿಮೇಲಾಗಿ ಹೊರಳ್ದರೆ ಧನ್ಯ ತಾನೆಂದ ೪೦

ಕೈದಣಿಯೆ ಹೊಯ್ದುರಿಯ ಸೀಳಿದು
ಬಾಯ್ದಣಿಯೆ ಮೂದಲಿಸಿ ಹೆಚ್ಚಿದ
ಮೈದಣಿಯೆ ರಿಪುಭಟನ ಹೊಯ್ಲಲಿ ಛಾಯವನು ಪಡೆದು
ಹಾಯ್ದು ಕರುಳಿನ ಮಿದುಳ ಜೋರಿನ
ತೊಯ್ದು ರಕ್ತಾಂಬರದಿ ತಾನಿರ
ಲೈದಿ ಕುರುಪತಿ ಕಂಡನಾದರೆ ಧನ್ಯ ತಾನೆಂದ ೪೧

ನರನ ರಕುತದ ಮದ್ಯಪಾನವ
ನೆರೆದು ಶಾಕಿನಿಯರಿಗೆ ಪಾರ್ಥನ
ಕರುಳ ದೊಂಡೆಯ ಕೂಳ ಮುದ್ದೆಯ ಬಡಿಸಿ ದೈತ್ಯರಿಗೆ
ಅರಿಯ ಖಂಡದಿ ಹಸಿಯ ಸುಂಟಿಗೆ
ವೆರಸಿ ಭೂತಾವಳಿಯ ದಣಿಸಿದ
ಡರಸು ಕೌರವನೆನ್ನ ಸಾಕಿತಕಂದು ಫಲವೆಂದ ೪೨

ಒಂಬತ್ತನೆಯ ಸಂಧಿ

ಸೂ. ಸೆಣಸು ಮಿಗಲೊಳಗೊಳಗೆ ಖತಿಯಲಿ
ಕೆಣಕಿ ಬೈದಾಡಿದರು ಸಮರಾಂ
ಗಣಭಯಂಕರ ಶಲ್ಯಭಾಸ್ಕರಸುತರು ರಥದೊಳಗೆ

ಕೇಳು ಧೃತರಾಷ್ಟ್ರಾವನಿಪ ನಿ
ನ್ನಾಳ ಖರೆಯದ ನುಡಿಯನಾಲಿಸಿ
ಕೇಳಿದನು ಕಲಿಶಲ್ಯ ಬೆರಳಲಿ ಮೀಸೆಗಳ ಮುರಿದು
ಹೇಳು ಹೇಳಿನ್ನೊಮ್ಮೆ ಪಾರ್ಥನ
ಹೇಳಿ ತೋರಿಸಲೇನ ಕೊಡುವೆ ನೃ
ಪಾಲಕನ ಪದದಾಣೆ ನುಡಿ ನುಡಿ ಕರ್ಣ ನುಡಿಯೆಂದ ೧

ಹಾರ ಖಡೆಯವ ಬೇಹ ಗಜಹಯ
ನಾರಿಯರ ಕೊಡಬೇಡ ಪಾರ್ಥನ
ತೋರಿ ಕೊಡುವನು ತನಗೆ ಹೇಳದೆ ಬರಿದೆ ಹಲುಗಿರಿದೈ
ಸೈರಿಸೀಗಳೆ ನಿನ್ನ ಕರುಳಿನ
ತೋರಣದ ಬಾಗಿಲಲಿ ವಿಜಯ
ಶ್ರೀರಮಣಿಯನು ತಹ ಕಿರೀಟಿಯ ತೋರಿಸುವೆನೆಂದ ೨

ಮೊಲನ ಕಾಹಿನ ಕಾಡಿನಲಿ ಹೆ
ಬ್ಬುಲಿ ವಿಭಾಡಿಸುವಂತೆ ನರಿಗಳು
ಬಲಿದ ಬೇಲಿಯ ಕದಳಿಯನು ಕಾಡಾನೆ ಹೊಗುವಂತೆ
ದಳವ ಬಗಿದು ಮಹಾರಥರನೊಡೆ
ದುಳಿದು ನಿನ್ನಯ ನಾಲಗೆಯ ಹೆಡ
ತಲೆಯಲುಗಿವರ್ಜುನನನೀಗಳೆ ತೋರಿಸುವೆನೆಂದ ೩

ಹೊರಗೆ ಕೊಡುವುದನಿತ್ತ ತಾ ನಾ
ನರಸಿ ತಹೆನರ್ಜುನನನೇತಕೆ
ಬರಿದೆ ಭಟರಿಗೆ ಬಾಯ ಬಿಡುತಿಹೆ ಕರ್ಣ ಖೂಳನಲ
ಅರಸಲೇತಕೆ ಕಾಲ ಮೃತ್ಯುವ
ನರಸುವರೆ ಕಾಲಾಗ್ನಿಯನು ನೀ
ನರಸಲೇಕರ್ಜುನನನೀಗಳೇ ತೋರಿಸುವೆನೆಂದ ೪

ಆವನೊಬ್ಬನ ಬಿಲ್ಲ ಬೊಬ್ಬೆಯ
ಡಾವರದಲೆದೆ ಬಿರಿವುದಹಿತರಿ
ಗಾವನೊಬ್ಬನ ದನಿಗೆ ಬಿರಿವುದು ಧೈರ್ಯಗಿರಿಶಿಖರ
ಆವನೊಬ್ಬನ ಕಂಡರರಿಗಳ
ಜೀವ ತಲೆಕೆಳಕಹುದು ಸುಭಟರ
ದೇವನಾತನು ಪಾರ್ಥ ಬೇಕೇ ತೋರಿಸುವೆನೆಂದ ೫

ಹಸುಳೆ ನಿದ್ದೆಯ ಹಾವ ಹೊಯ್ದೆ
ಬ್ಬಿಸುವರೇ ಮೈಮರೆದು ಮಾರಿಯ
ಮುಸುಕನುಗಿವುದು ಬುದ್ಧಿಯೇ ಜೀವಾಭಿಲಾಷರಿಗೆ
ನುಸಿಗಳುರಿಜಾಳಿಗೆಯೊಡನೆ ಝೊಂ
ಪಿಸುವುದುಚಿತವೆ ಕರ್ಣ ಪಾರ್ಥನ
ಘಸಣಿಯೇಕೈ ನಿನಗೆ ಬೇಕೇ ತೋರಿಸುವೆನೆಂದ ೬

ಗರುಡನೆತ್ತಲು ಕೊಬ್ಬಿದೊಳ್ಳೆಯ
ಮರಿಯದೆತ್ತಲು ಸಿಂಹವೆತ್ತಲು
ನರಿಗಳೆತ್ತಲು ದಿಗಿಭವೆತ್ತಲು ನಾಯಮರಿಯೆತ್ತ
ನರನೊಡನೆ ಸಮದಂಡಿಯೇ ಜಗ
ವರಿಯದೇ ನಿನ್ನಾತನಭ್ಯಂ
ತರವನಕಟಾ ಕರ್ಣ ಸುಡು ನೀ ಕಷ್ಟ ಹೋಗೆಂದ ೭

ದಿಟಕೆ ಪಾರ್ಥನ ತೋರಿದರೆ ಸಂ
ಕಟವ ಮಾಡದೆ ಮಾಣಲಾಕಟ
ಕಟ ಧನಂಜಯನೆಂದು ಸೋತನು ಹಿಂದೆ ನಿನ್ನೊಡನೆ
ಕುಟಿಲಮತಿ ಗೋಗ್ರಹಣದಲಿ ಲಟ
ಕಟಿಸಿದನಲಾ ಮದುವೆಯೊಳಗು
ಬ್ಬಟೆಯ ಬಿಲ್ಲಿನೊಳೊದಸಿಕೊಂಡವ ಪಾರ್ಥನಹುದೆಂದ ೮

ನರನ ತೋರಿಸಿದವಗೆ ಶತ ಸಾ
ಸಿರವ ಸೂಸುವೆನೆಂದಲಾ ನಿ
ನ್ನರಸನನು ಗಂಧರ್ವರೆಳೆದೊಯ್ದಂದು ಗಗನದಲಿ
ಅರಸಿಯರು ಸಚಿವರು ಕುಮಾರರು
ಮೊರೆಯಿಡಲು ಫಲುಗುಣನು ಬಿಡಿಸಿದ
ಪರಿಯ ನೀ ನೆರೆ ಕಂಡು ಮರೆವರೆ ಕರ್ಣ ಹೋಗೆಂದ ೯

ಕಂಡು ಮಾಡುವುದೇನು ಭೀಷ್ಮರು
ಕಂಡುದಿಲ್ಲಾ ಚಾಪವಿದ್ಯಾ
ಖಂಡಪರಶು ದ್ರೋಣನರ್ಜುನನನು ರಣಾಗ್ರದಲಿ
ಕಂಡು ನೀನೇಗುವೆ ಸುಯೋಧನ
ಭಂಡನೋ ಸಾರಥಿತನದ ನಾ
ಭಂಡನೋ ನೀ ಭಂಡನೋ ನಾವರಿಯೆವಿದನೆಂದ ೧೦

ಕಡು ಪರಾಕ್ರಮುಪಿತ್ತ ನೆತ್ತಿಯ
ಹಿಡಿದು ನೀ ಗಳಹಿದರೆ ನಿನ್ನೀ
ಹಡಪದವರೀ ಚಮರದವರೀ ಛತ್ರಧಾರಿಗಳು
ಒಡೆಯು ನೀನೆಂದಂಜಿ ನಿರುತವ
ನುಡಿಯುಲಮ್ಮರು ತಮ್ಮ ಮನದೊಳ
ಗೊಡಬಡುವರೇ ಕದನಬಾಹಿರ ಕರ್ಣ ಹೋಗೆಂದ ೧೧

ಕೇಳುತಿರ್ದನು ಕರ್ಣನಿವನಾ
ಭೀಳ ವಚನವನಧಿಕ ರೋಷ
ಜ್ವಾಲೆ ಝಳಪಿಸೆ ಮೀಸೆಗಡಿದನು ತೂಗಿದನು ಶಿರವ
ಖೂಳನಿವನನು ಹೊಯ್ದು ರೊಳಗೊಳ
ಗಾಳುದೋಟಿ ವಿಕಾರಿ ವಿಪ್ರನ
ಕಾಳು ಶಾಪದ ಫಲವಲಾ ಸಂಪ್ರಾಪ್ತವಾಯ್ತೆಂದ ೧೨

ಈಸು ನೀನರ್ಜುನನ ಪಕ್ಷಾ
ವೇಶಿಯೇ ಶಿವಶಿವ ಮಹಾದೇ
ವೇಸು ನಂಬಿಹನೋ ಸುಯೋಧನನೇನ ಮಾಡುವೆನೊ
ಸೀಸಕವೆ ರವಿಕಾಂತವಾಗಿ ದಿ
ನೇಶನನು ಕೆಣಕಿದವೊಲಿಂದವ
ನೀಶನೀತನ ನಂಬಿ ಕೆಟ್ಟನು ಕೆಟ್ಟನಕಟೆಂದ ೧೩

ಸೆಣಸಿದ್ದೈ ತನ್ನೊಡನೆಯಿಾ ಫಲು
ಗುಣನ ಭಟನೋ ನೀನು ನೃಪತಿಯ
ರಣವಿಜಯವಿದ್ವೇಷಿಯೋ ನಾವರಿಯೆವಿಂದೀಗ
ಅಣಕವೇ ತುರುಗಾಹಿ ಕಾಜಿನ
ಮಣಿಯ ಬಲ್ಲನು ಗಡ ಕಿರೀಟಿಯ
ಗುಣ ಪರಾಕ್ರಮತನವ ನೀನೇ ಬಲ್ಲೆ ದಿಟವೆಂದ ೧೪

ರೂಢಿಯೋಲೆಯಕಾರನರ್ಜುನ
ನಾಡಿ ಪತಿಕರಿಸುವನು ನೀನದ
ನೋಡಿ ಸಂತಸಬಡುವರಿಬ್ಬರು ಕೃಪನು ಗುರುಸುತನು
ಕೋಡಗದ ಮೊಗಸಿರಿಗೆ ಕಾವಲಿ
ಯೋಡು ಕನ್ನಡಿಯಾಯ್ತು ಗಡ ಕೃತ
ಗೇಡಿಗುಚಿತವನೇನ ಮಾಡುವೆನೆಂದನಾ ಕರ್ಣ ೧೫

ಹಗೆಯನೇ ಕೊಂಡಾಡಿ ಸ್ವಾಮಿಗೆ
ಬೆಗಡ ಬೆಳಸಿ ರಣಾಗ್ರ ಸುಭಟರ
ನಗಡು ಮಾಡಿ ವೃಥಾತ್ಮ ಕುಕ್ಷಿಂಭರಿಕರೆಂದೆನಿಸಿ
ಹೊಗಳಿಕೆಗೆ ಹೊರಗಾದರೈವರು
ವಿಗಡರದರೊಳಗಿಬ್ಬರಳಿದರು
ಹಗೆಗಳುಳಿದಿರಿ ಮೂವರೆಂದನು ಭಾನುಸುತ ಮುಳಿದು ೧೬

ನಾವು ಭಂಡರು ಗರುವ ರಾಯರು
ನೀವಲೇ ಭುವನದಲಿ ಬಾಹಿರ
ರಾವು ನೀವತಿ ಚದುರರಾದಿರಲಾ ಮಹಾದೇವ
ತಾವು ತಮ್ಮಯ ಹೆಚ್ಚು ಕುಂದಿನ
ಜೀವಕಳೆಯರಿಯದ ನಿರರ್ಥಕ
ಜೀವಿಗಳಹಂಕಾರತನಕೇನೆಂಬುದಿದಕೆಂದ ೧೭

ಮುನಿದೆನಾದರೆ ಕೋಟಿ ಕೃಷ್ಣಾ
ರ್ಜುನರ ಕೊಂಬೆನೆ ರಣಕೆ ದುರ್ಯೋ
ಧನಗೆ ಮಲೆವರ ಮಾರಿ ಪಾಂಡವಮೇಘ ಪವಮಾನ
ತನಗೆ ಸರಿ ಯಾರಿಲ್ಲ ನೆಣಗೊ
ಬ್ಬಿನಲಿ ನುಡಿದೈ ನಿನ್ನ ಬಾಂಧವ
ಜನ ಸಹಿತ ಹಿಂಡುವೆನು ಹಿಂದಿಕ್ಕುವನ ತೋರೆಂದ ೧೮

ಆರಿಗಾವುದು ದೇಶವಾ ಸಂ
ಸ್ಕಾರವವರಿಗೆ ಬಿಡದು ಬುದ್ಧಿಗೆ
ಬೇರುಗೊಲೆಯಲ್ಲಾ ಕುದೇಶ ಕುವಂಶ ಸಂಭೂತಿ
ಊರುಗರಲಾ ಮಾದ್ರದೇಶದ
ಭೂರಿ ದುರಿತರು ಕ್ಷತ್ರ ತಿಮಿರ ವಿ
ಕಾರಿಗಳ ಜಾತಿಯಲಿ ಜನಿಸಿದೆ ಶಲ್ಯ ಕೇಳೆಂದ ೧೯

ಖೂಳರಿಗೆ ತಾ ಜನ್ಮಭೂಮಿ ವಿ
ಟಾಳ ಚರಿತರ ತೌರುಮನೆ ದು
ಶ್ಶೀಲರಿಗೆ ದರ್ಪಣ ವಿಕಾರಿಗಳಿಗೆ ವಿಹಾರವನ
ಹೇಳುವರೆ ಪರಮಾಣು ಗುಣವಾ
ಬಾಲ ವೃದ್ಧರೊಳಿಲ್ಲ ಠಕ್ಕಿನ
ಠೌಳಿಕಾರರು ಮಾದ್ರದವರೆಲೆ ಶಲ್ಯ ಕೇಳೆಂದ ೨೦

ರಣದೊಳೊಡೆಯನ ಜರೆದು ಜಾರುವ
ಗುಣಸಮುದ್ರರು ಮಾದ್ರದೇಶದ
ಭಣಿತೆ ತಾನದು ಬೇರೆ ನಡೆವಳಿಯುಂಗವದು ಬೇರೆ
ಗಣಿಕೆಯರ ಮಧ್ಯದಲಿ ಮಧ್ಯದ
ತಣಿವಿನಲಿ ತನಿಸೊಕ್ಕಿ ಬತ್ತಲೆ
ಕುಣಿವ ಭಂಗಿಯ ಭಂಡರೆಲವೋ ಶಲ್ಯ ಕೇಳೆಂದ ೨೧

ಕುಟಿಲಸೃಷ್ಟಿಗೆ ನೀವರಸು ಚಾ
ವಟೆಯರಿಗೆ ಮನೆ ದುರ್ವ್ಯಸನ ಲಂ
ಪಟರಿಗಾಚಾರಿಯರು ಖಳರಿಗೆ ನಿಮ್ಮೊಳುಪದೇಶ
ಅಟಮಟದ ಘನದೇಹಸಿದ್ಧಿಯ
ಘುಟಿಕೆ ನಿಮ್ಮಲಿ ರಣಪಲಾಯನ
ಪಟುಭಟರಲಾ ಗುಣವಿಹೀನರು ಶಲ್ಯ ನೀವೆಂದ ೨೨

ಗರುಡ ಮತದಲಿ ಸರ್ಪವಿಷ ಪರಿ
ಹರಿಸುವುದು ದುರ್ಜನವಚೋ ನಿ
ಷ್ಠುರ ಮಹಾ ವಿಷಕಾವ ಗಾರುಡವಾವ ಮಂತ್ರಮುಖ
ದುರುಳ ನೀ ದುರುದುಂಬಿತನದಲಿ
ಹುರುಳುಗೆಡಿಸಿದಡೀಸರಲಿ ನೀ
ಗರುವನೇ ಬಾಹಿರನು ನಾನೇ ಶಲ್ಯ ಕೇಳೆಂದ ೨೩

ಏಸು ಪರಿಯಲಿ ನುಡಿದು ನಮ್ಮಯ
ದೇಶವನು ನೀ ಹಳಿದಡೆಯು ನೀ
ನೇಸು ಪರಿಯಲಿ ಬಯ್ದು ಭಂಗಿಸಿ ನಮ್ಮ ದೂರಿದಡೆ
ಆ ಸಿತಾಶ್ವನ ಬಿಲ್ಲನೊದೆದಾ
ಕಾಶಕವ್ವಳಿಸುವ ಶರೌಘಕೆ
ಮಿಾಸಲರಿಯಾ ಕರ್ಣ ನಿನ್ನೊಡಲೆಂದನಾ ಶಲ್ಯ ೨೪

ಅರಳಿದಂಬುಜದೆಸಳಿನಲಿ ಕಡ
ದುರುವ ಕಂಡಡೆ ಕೂಡುವುದೆ ಮಧು
ಕರನ ಲಾಯದೊಳೆಲವೊ ಕರ್ಣ ದುರಾತ್ಮ ನಿನ್ನೊಡನೆ
ನರನ ಸರಿದೂಗುವರೆ ತೋರಿದ
ಪರಿಯಲೆಮ್ಮನು ಹೊಳ್ಳುಗಳೆ ಸಾ
ವಿರವನಿದರಲಿ ಖಾತಿಗೊಂಡಡೆ ಪಾರ್ಥನಾಣೆಂದ ೨೫

ಕ್ಷಣದೊಳೀಗಳೆ ಭೀಮ ಪಾರ್ಥರ
ರಣದೊಳಗೆ ತೋರುವೆನು ಕದಳಿಯ
ಹಣಿದವೊ ನಿನ್ನಾಳು ಕುದುರೆಯ ಕಾಣಲಹುದೀಗ
ಬಣಗು ನೀ ಭಾರಂಕ ಭಟನೊಳ
ಗಣಕಿಸುವೆ ಫಡ ಪಾಡನರಿಯದೆ
ಸೆಣಸಿದರೆ ನೀ ಶೂರನೆಂಬರೆ ಕರ್ಣ ಕೇಳೆಂದ ೨೬

ಜಲಧಿ ಗಹನವೆ ನಿನ್ನೊಡನೆ ಹೊ
ಕ್ಕಳವಿಗೊದಗುವೆನೆಂದು ವಾಯಸ
ಕಳಿನುಡಿದು ಹಾರಿತ್ತು ಹಂಸೆಯ ಕೂಡೆ ಗಗನದಲಿ
ಬಳಿಕ ತಲೆಕೆಳಗಾಗಿ ಸಾಗರ
ದೊಳಗೆ ಬಿದ್ದುದು ಹಂಸೆ ತಂದಿಳೆ
ಗಿಳುಹಿತಾ ಪರಿ ಕಾಕ ಪೌರುಷ ಕರ್ಣ ನೀನೆಂದ ೨೭

ಆಡಲರಿಯದೆ ಬರಿದೆ ಸೈನ್ಯವ
ಹೂಡಿ ಹಲಬರ ಕೊಲಿಸಿ ಬಲವ
ಕ್ಕಾಡೆ ಕುರುಪತಿ ಕಟ್ಟುವಡೆಯನೆ ಕಳನ ಮಧ್ಯದಲಿ
ಆಡಿದಾತನು ಗೆಲವನರಸಿಗೆ
ಮಾಡಿದಾತನು ಸಾಕು ಪಾರ್ಥನ
ಕೂಡೆ ವಿಗ್ರಹ ಬೇಡ ತೆಗೆ ಮರಳೆಂದನಾ ಶಲ್ಯ ೨೮

ಬರಿಯ ಪಕ್ಷಭ್ರಮೆಯಲಾಡಿದ
ಡುರುವ ನುಡಿಯೇ ಶಲ್ಯ ಪಾರ್ಥನ
ನರಿವೆ ನಾನೆನ್ನಂಘವಣೆಯನು ಬಲ್ಲನಾ ಪಾರ್ಥ
ಸರಿಹೃದಯ ನೀ ನಿನ್ನೊಡನೆ ಸರಿ
ಗೊರಲಲಾರೆನು ಭೀಮ ಪಾರ್ಥರ
ನೊರಲಿಸುವೆನೀ ಬಾಣದಲಿ ಮಾದ್ರೇಶ ಕೇಳೆಂದ ೨೯

ಝಳದ ಝಾಡಿಗೆ ಹೆದರಿ ಸೂರ್ಯನ
ನುಳುಹುವನೆ ಕಲಿ ರಾಹು ದಾವಾ
ನಳನ ದಳ್ಳುರಿಗಳುಕುವುದೆ ಜೀಮೂತ ಸಂದೋಹ
ಫಲುಗುಣನ ಕಣೆಗಿಣೆಯು ಪವನಜ
ನಳಬಳವ ಕೈಕೊಂಬ ಕರ್ಣನೆ
ತಿಳಿಯಲಾ ಮಾದ್ರೇಶ ನನ್ನಯ ವ್ಯಥೆಯ ಕೇಳೆಂದ ೩೦

ಪರಶುರಾಮನ ಕಂಡು ಹೊಕ್ಕೆನು
ಗರುಡಿಯನು ದ್ವಿಜನೆಂದು ಕಲಿತೆನು
ವರಧನುರ್ವೇದವನು ಪಡೆದೆನು ದಿವ್ಯಮಾರ್ಗಣವ
ಸುರಪತಿಯ ಬೇಳಂಬವನು ವಿ
ಸ್ತರಿಸಲೇತಕೆ ವಜ್ರ ಕೀಟೋ
ತ್ಕರವ ಕಳುಹಿದರೆನ್ನ ತೊಡೆಗಳನುಗಿದವವು ಬಳಿಕ ೩೧

ಅರುಣಜಲ ಹೊನಲೆದ್ದು ಮಗ್ಗುಲ
ಲುರವಣಿಸಲಾ ರಾಮ ನಿದ್ರಾ
ಭರದಲಿದ್ದವನೆದ್ದು ನೋಡಿದನೆನಗೆ ಕಡುಮುಳಿದು
ಧರಣಿಸುರನೆಂದೆನ್ನ ಠಕ್ಕಿಸಿ
ಶರವ ಬೇಡಿದೆ ಕಾಳೆಗದೊಳೀ
ಶರ ನಿರರ್ಥಕವಾಗಲೆಂದನು ಶಾಪಹಸ್ತದಲಿ ೩೨

ಅದರಿನೀ ದಿವ್ಯಾಸ್ತ್ರ ಕಾಳೆಗ
ಕೊದಗಲರಿಯವು ಶಲ್ಯ ಪಾರ್ಥನ
ಸದೆವುದೇನರಿದಲ್ಲ ಕುರುಪತಿ ಹೀನಪುಣ್ಯನಲೆ
ಇದು ನಿದಾನವು ಬಾಣ ಮತ್ತೆನ
ಗೊದಗುವುವು ಬೇರುಂಟು ನೃಪನ
ಭ್ಯುದಯವುಳ್ಳಡೆ ಗೆಲುವೆನಹಿತರನೆಂದನಾ ಕರ್ಣ ೩೩

ಅರಸನಭ್ಯುದಯವನು ನೀನಧಿ
ಕರಿಸಿ ಗೆಲುವಡೆ ನಿನ್ನ ಹಂಗೇ
ಕರಿಗಳನು ಜಯಿಸುವರು ನವಿಮ್ಮಾ ಛತ್ರಧಾರಕರು
ಸೊರಹದಿರು ಸಾರತ್ತ ತಾಗಿತು
ಪರಶುರಾಮನ ಶಾಪ ಗಡ ಮರು
ಳರಸು ಕೌರವ ನಿನ್ನ ಸಾಕಿದನೆಂದನಾ ಶಲ್ಯ ೩೪

ಕುಲಕೆ ಸೇರುವ ಮಾತು ಮಾತಿನ
ಬಳಿಗೆ ಸೇರುವ ಬಾಹುಬಲ ಭುಜ
ಬಲದ ತೂಕದ ಕೀರ್ತಿ ಕೀರ್ತಿಯ ಪರಿಯ ಪರಲೋಕ
ಇಳೆಯೊಳಗೆ ನಿನಗಲ್ಲದಾರಿಗೆ
ಸಲುವುದೆಲವೋ ಸೂತಸುತ ನಿ
ರ್ಮಳ ಪುರುಷ ನಿನ್ನಂಗ ದೇಶದ ವಿಧಿಯ ಕೇಳೆಂದ ೩೫

ವೇದಕರ್ಮವಿರೋಧಿಗಳು ಪರಿ
ವಾದಶೀಲರು ವರ್ಣಜಾತಿವಿ
ಭೇದಹೀನರು ಸಾರಸಪ್ತವ್ಯಸನಸಂಗತರು
ಕಾದುವರು ಬೆನ್ನಿನಲಿ ಗೆಲುವರು
ಪಾದದಲಿ ಪರಬಲವನಿರಿವರು
ಬೀದಿಯಲಿ ನಿನ್ನಂಗದೇಶದ ಸಿರಿಯ ಕೇಳೆಂದ ೩೬

ನಿನಗೆ ಸಾರಥಿಯಾದ ಬಾಹಿರ
ತನವೆ ತಾನದು ಸಾಲದೇ ಬೇ
ರೆನಗೆ ತಲೆಗುತ್ತಾವುದೆನುತವೆ ಬಿಸುಟು ವಾಘೆಯವ
ಮನಕತವ ಮೋರೆಯಲಿ ತತ್ಸ್ಯಂ
ದನವನಿಳಿಯಲು ಭಂಡ ಫಡ ಹೋ
ಗೆನುತ ಖಡುಗವ ಜಡಿದು ನುಡಿದನು ಭಾನುಸುತ ಮುಳಿದು ೩೭

ಹೊಡೆದು ತಲೆಯನು ನಿನ್ನ ರಕುತವ
ಕುಡಿಸುವೆನು ಕೂರಸಿಗೆ ಪವನಜ
ನೊಡಲನೆತ್ತರ ತುಂಬುವೆನು ಪಾರ್ಥನ ಕಪಾಲದಲಿ
ಮಿಡುಕಬಾರದಲೇ ಸುಯೋಧನ
ತೊಡಗಿದಗ್ಗದ ರಾಜಕಾರಿಯ
ಕೆಡುವುದೆಂದೇ ನಿನ್ನನುಳಿಹಿದೆನೆಂದನಾ ಕರ್ಣ ೩೮

ಒಳಗೆ ಗಜಬಜವಾಯ್ತು ಶಲ್ಯನ
ಬಲುಭಟರು ಮುಂಕ್ಕುರುಕಿದರು ಕುರು
ಬಲದ ಮೆಳೆಯಲ್ಲಾಡಿತಲ್ಲಿಯದಲ್ಲಿ ಗುಜುಗುಜಿಸಿ
ಬಳಿಕ ಕೌರವರಾಯ ಹರಿತಂ
ದಿಳಿದು ದಂಡಿಗೆಯಿಂದ ಗುಣದಲಿ
ತಿಳುಹಿ ಶಲ್ಯನ ಬೇಡಿಕೊಂಡನು ರಥಕೆ ಮರಳಿಚಿದ ೩೯

ನುಡಿದು ಕರ್ಣನ ತಿಳುಹಿ ಶಲ್ಯನ
ನೊಡಬಡಿಸಿ ರವಿಸುತನನಂಘ್ರಿಗೆ
ಕೆಡಹಿ ಮಾದ್ರೇಶನ ಮನಸ್ತಾಪವನು ನೆರೆ ಬಿಡಿಸೆ
ಕಡಹದಂಬುಧಿಯಂತೆ ವಾದ್ಯದ
ಗಡಣ ಮೊರೆದವು ಪ್ರಳಯಸಮಯದ
ಸಿಡಿಲವೊಲು ಸೂಳೈಸಿದವು ನಿಸ್ಸಾಳಕೋಟಿಗಳು ೪೦

ಹತ್ತನೆಯ ಸಂಧಿ

ಸೂ. ರಾಯದಳ ಹಳಚಿದುದು ಕಲಿರಾ
ಧೇಯನಲಿ ಸಂಕುಳದೊಳೊದಗಿದ
ವಾಯುಸುತ ಸುಮರದಲಿ ಕೊಂದನು ಕರ್ಣನಂದನನ

ಕೇಳು ಧೃತರಾಷ್ಟ್ರಾವನಿಪ ತ
ವ್ಮಾಳ ವೇಳಾಪದಲಿ ಪಾಂಡು ನೃ
ಪಾಲಕರ ದಳ ನಡೆದು ಬಂದುದು ಭೂರಿ ರಭಸದಲಿ
ಆಳೊಳಗ್ಗಳೆಯರಿಗೆ ಕೊಟ್ಟನು
ವೀಳೆಯವನಾ ಕರ್ಣನತಿರಥ
ಜಾಳವನು ಪರುಠವಿಸಿ ನಿಲಿಸಿದನೆರಡು ಪಕ್ಕದಲಿ ೧

ರಾಯಘಟ್ಟಿನ ಬಲದ ಬಾಹೆಯ
ನಾಯಕರು ಸಂಶಪ್ತಕರು ವಿವಿ
ಧಾಯುಧದ ಕಾಂಭೋಜ ಬರ್ಬರ ಚೀನ ಭೋಟಕರು
ಸಾಯಕದ ಕಿವಿವರೆಯ ತೆಗಹಿನ
ಘಾಯ ತವಕಿಗರೆಡಬಲದ ಕುರು
ರಾಯನನುಜರು ರಂಜಿಸಿತು ದುಶ್ಶಾಸನಾದಿಗಳು ೨

ಗುರುಸುತನ ಕೂಡೆಂಟುಸಾವಿರ
ವರ ಮಹಾರಥರೈದುಸಾವಿರ
ಕರಿಘಟೆಗಳಿಪ್ಪತ್ತು ಸಾವಿರ ರಾವುತರೊಗ್ಗಿನಲಿ
ಧರಣಿಪತಿ ಕೃತವರ್ಮ ಕೃಪ ಹ
ನ್ನೆರಡು ಸಾವಿರ ರಥಸಹಿತ ಮೋ
ಹರಿಸಿದರು ಬಲವಂಕದಲಿ ದಳಪತಿಯ ನೇಮದಲಿ ೩

ಘಟ್ಟಿನೆಡವಂಕದಲಿ ಹಗೆಗೊರೆ
ಗಟ್ಟಿ ನಿಂದರು ಕುರುಬಲದ ಜಗ
ಜಟ್ಟಿ ವೃಷಸೇನನು ಸುಷೇಣನು ಶಕುನಿ ಬಲಸಹಿತ
ಬೆಟ್ಟ ಬೀಳಲುಂವರಿದವೆನೆ ಕೈ
ಮುಟ್ಟಿ ಮಹಿಯನು ದಂತಿಘಟೆ ಸಾ
ಲಿಟ್ಟುದೆತ್ತಣ ಸೇನೆಯೋ ನಾವರಿಯೆವಿದನೆಂದ ೪

ಆ ನದೀನಂದನನ ಸಮರದಿ
ಸೇನೆ ಸವೆದುದನಂತ ಬಳಿಕಿನ
ಸೇನೆ ಗರಿ ಸೋಂಕಿಲ್ಲ ಕಂಡೆನು ದ್ರೋಣ ಪರ್ವದಲಿ
ಏನನೆಂಬೆನು ಜೀಯ ಮಂತ್ರೀ
ಭಾನುತನಯನ ಕದನಕೊದಗಿದ
ಸೇನೆ ಸಂಖ್ಯಾತೀತವೆಂದನು ಸಂಜಯನು ನೃಪಗೆ ೫

ಒಡ್ಡಿತೀ ಬಲ ರಿಪುಭಟರು ಮಾ
ರೊಡ್ಡ ಮೆರೆದರು ನೆರತೆಯೊ
ಳೊಡ್ಡಿಗೊಬ್ಬರ ಕರೆದು ಪರುಠವಿಸಿದನು ಮುರವೈರಿ
ಒಡ್ಡಿನೆಡದಲಿ ಭೀಮನಾ ಬಲ
ದೊಡ್ಡಿನಲಿ ಕಲಿಪಾರ್ಥ ದಳಪತಿ
ಯೊಡ್ಡಿನಲಿ ನಿಂದನು ಯುಧಿಷ್ಠಿರರಾಯ ದಳಸಹಿತ ೬

ಈ ಮಹಾ ಮೋಹರವನತಿ ನಿ
ಸ್ಸೀಮರಾಂತರು ಮೂವರೇ ಬಳಿ
ಕಾ ಮಹಾರಥ ರಾಜಿಯಡಗಿದುದವರ ರಶ್ಮಿಯಲಿ
ಸೋಮಸೂರ್ಯಾಗ್ನಿಗಳಿದಿರೊಳು
ದ್ದಾಮ ತೇಜಸ್ವಿಗಳೆ ದಿಟ ಕುರು
ಭೂಮಿಪತಿ ಹೇಳೆಂದು ನುಡಿದನು ಸಂಜಯನು ನಗುತ ೭

ಎರಡು ಬಲವುಬ್ಬೆದ್ದು ದಿದರೊಳು
ಮೊರೆವ ಭೇರಿಯ ಭಟರ ಬೊಬ್ಬೆಯ
ಕರಿಯ ಗಜರಿನ ಹಯದ ಹೇಷಾರವದ ಹಲ್ಲಣೆಯ
ಜರಿವ ಕಹಳೆಯ ಝಾಡಿಸುವ ಜ
ರ್ಝರದ ಡಿಂಡಿಮ ಡಮರು ಪಟಹದ
ಧರಧುರದ ದನಿ ಧೈರ್ಯಗೆಡಿಸಿತು ಸಕಲ ಸಾಗರವ ೮

ಬೆರಸಿದವು ಬಲವೆರಡು ಹೊಕ್ಕವು
ಕರಿಘಟೆಗಳೇರಿದವು ಕುದುರೆಗ
ಳುರವಣಿಸಿದವು ತೇರ ತಿವಿದರು ಹೊಂತಕಾರಿಗಳು
ಉರುಳ್ವ ತಲೆಗಳ ಬಸಿವ ಮಿದುಳಿನ
ಸುರಿವ ಕರುಳಿನ ಸೂಸುವೆಲುವಿನ
ಹೊರಳ್ವ ಮುಂಡದ ರೌದ್ರರಣ ರಂಜಿಸಿತು ಚೂಣಿಯಲಿ ೯

ಜೋಡನೊಡೆದವಯುವದ ರಕುತವ
ತೋಡಿದವು ಕೂರಂಬು ಸಬಳದ
ನೀಡುವೊನೆ ನಿರಿಗರುಳನೆಂಜಲಿಸಿದವು ಪಟುಭಟರ
ಖೇಡರಸು ಬೆನ್ನೀಯೆ ನೆತ್ತಿಯ
ಬೀಡೆ ಬಿರಿಯಲು ಬಿದ್ದ ಲೌಡೆಗ
ಳೀಡಿರಿದವರಿ ಚಾತುರಂಗದ ಚಪಳ ಚೂಣಿಯಲಿ ೧೦

ತೆಗೆಯ ಹೇಳೋ ಚೂಣಿಯಲಿ ಕಾ
ಳೆಗದ ಕೌತುಕವೆತ್ತ ದೊರೆಗಳು
ಹೊಗಲಿ ದಳನಾಯಕರು ನುಗ್ಗಿನ ಬೀಯಕಳುಕರಲ
ವಿಗಡ ಭೀಮಾರ್ಜುನರ ಬಸುರ
ಲ್ಲುಗಿ ಕರುಳನೆನುತಬ್ಬರದ ಬೊ
ಬ್ಬೆಗಳ ಬಿರುದರು ಕೆಣಕಿದರು ಸಮಸಪ್ತಕರು ನರನ ೧೧

ರಾಯನಾವೆಡೆ ಕೌರವೇಂದ್ರನ
ದಾಯಿಗನ ಬರಹೇಳು ಹಿಂದಣು
ಪಾಯ ಕೊಳ್ಳದು ನಿಮ್ಮ ಭೀಷ್ಮದ್ರೋಣರಾವಲ್ಲ
ಕಾಯಿದೆವು ಕೈಮುಗಿದನಾದರೆ
ಸಾಯಬಲ್ಲರೆ ತಿರುವನೊದೆಯಲಿ
ಸಾಯಕದ ಹಿಳುಕೆನುತ ಬಿಟ್ಟನು ಸೂಠಿಯಲಿ ರಥವ ೧೨

ಬಿಟ್ಟ ಸೂಠಿಯೊಳುಗಿವ ಕರ್ಣನ
ಥಟ್ಟಣೆಯ ಕಂಡನಿಲಸುತನಡ
ಗಟ್ಟಿದನು ಹದಿನೆಂಟು ಸಾವಿರ ರಥಿಕರೊಗ್ಗಿನಲಿ
ಇಟ್ಟಣಿಸಿ ಬರೆ ರವಿಸುತನ ಕೈ
ಮುಟ್ಟಲೀಯದೆ ಕೌರವೇಂದ್ರನ
ಥಟ್ಟಿನಲಿ ಮೂವತ್ತು ಸಾವಿರ ಕರಿಗಳೌಕಿದವು ೧೩

ಕರಿಘಟೆಯಲಾ ನಮ್ಮ ಪುಣ್ಯದ
ಪರಿಣತೆಯಲಾ ನಮ್ಮ ರಥಿಕರು
ಸರಳ ತೊಡದಿರಿ ಸೈರಿಸುವುದರೆಗಳಿಗೆ ಮಾತ್ರದಲಿ
ಅರಿ ಹಿರಣ್ಯಕ ಬಲಕೆ ನರಕೇ
ಸರಿಯ ಪಾಡೆನಿಸುವೆನು ಕಣ್ಣಿವೆ
ಮರೆಗೆ ಮುಂಚುವೆನೆನುತ ಹೊಕ್ಕನು ಭೀಮ ಗಜಬಲವ ೧೪

ಬಿರಿದುವೀತನ ಸಿಂಹ ನಾದಕೆ
ಕರಿಗಳೆದೆಮಣಿ ಗದೆಯ ಹೊಯ್ಲಲಿ
ತಿರುಗಿ ಕೋಡಡಿಯಾಗಿ ಕೆಡೆದವು ಮಡಿದವಾಕ್ಷಣಕೆ
ಉರುಳಿದವು ಪರ್ವತದ ವಜ್ರದ
ಸರಿಸ ಹೋರಟೆ ಕಾಣಲಾದುದು
ಕರಿಘಟೆಯ ಪವನಜನ ರಣದಲಿ ರಾಯ ಕೇಳೆಂದ ೧೫

ನೀಲಗಿರಿಗಳ ನೆಮ್ಮಿ ಘನ ಮೇ
ಘಾಳಿ ಸುರಿದವು ಮಳೆಯನೆನೆ ಶರ
ಜಾಳ ಕವಿದುದು ಗಜದ ಜೋಧರ ಝಾಡಿಯೆಸುಗೆಯಲಿ
ಕೋಲ ಕೊಂಬನೆ ಭೀಮ ಸಿಡಿಲುರಿ
ನಾಲಗೆಗೆ ನೀರೇಗುವುದು ಮೇ
ಲಾಳ ಮುರಿದನು ವಿವಿಧ ಶಸ್ತ್ರಾಸ್ತ್ರ ಪ್ರಹಾರದಲಿ ೧೬

ಕರಿಯ ಬರಿಕೈಯೆಸುವ ಜೋಧರ
ಕರ ಮಹಾಂಕುಶದವನ ಕೈ ಕ
ತ್ತರಿಸಲೊಂದೇ ಶರದಲೆಚ್ಚನು ಮತ್ತೆ ಗದೆಗೊಂಡು
ತಿರುಗಿ ಹೊಯ್ದನು ಜೋಡು ಜೋಧರು
ಕರಿಯೊಡಲು ಸಮಸೀಳ ಸೀಳಲು
ಅರಸ ಬಣ್ಣಿಸಲಾರು ಬಲ್ಲರು ಭೀಮ ಸಾಹಸವ ೧೭

ಹಿಂಡೊಡೆದು ಗಜಸೇನೆ ಮುಮ್ಮುಳಿ
ಗೊಂಡು ಮುರಿದುದು ಮುಳಿದು ಭೀಮನ
ಗಂಡುಗೆಡಿಸುವರಿಲ್ಲ ಕೌರವ ದಳದ ಸುಭಟರಲಿ
ಅಂಡುಗೊಂಡುದು ಬಿರುದುಗಿರುದಿನ
ಗಂಡರಕಟಕಟೆನುತ ನಿಜ ಕೋ
ದಂಡವನು ದನಿಮಾಡುತಶ್ವತ್ಥಾಮನಿದಿರಾದ ೧೮

ಎಲೆಲೆ ರಾಯನ ತಮ್ಮನೋ ಗಜ
ಬಲದೊಡನೆ ಬಳಲಿದನು ಗುರುಸುತ
ನಳವು ಕಿರಿದೇ ಸ್ವಾಮಿದ್ರೋಹರ ನೂಕು ನೂಕೆನುತ
ಉಲಿದು ಧೃಷ್ಟದ್ಯುಮ್ನ ಬಲವಿ
ಟ್ಟಳಿಸಿ ನೂಕಿತು ಭೀಮಸೇನನ
ನೆಲನ ಕೊಂಡರು ಕಡುಹಿನಲಿ ಪಾಂಚಾಲ ನಾಯಕರು ೧೯

ಮರುಗದಿರಿ ಪಾಂಚಾಲರಾಯನ
ಮರಿಗಳಿರ ಭೀಮಂಗೆ ತಪ್ಪೇ
ನುರವ ದೊರೆ ಸೊಪ್ಪಾಗದಂತಿರೆ ನೀವು ಕಾದುವಿರೆ
ಅರಿವೆನಾದರೆಯೆನುತ ಬಾಣವ
ತಿರುಹಲಾ ನಿಮಿಷದಲಿ ನಿಂದನು
ಗುರುಸುತನ ಹಿಂದಿಕ್ಕಿ ಪಾಂಚಾಲರಿಗೆ ಕಲಿಕರ್ಣ ೨೦

ಕ್ಷಮಿಸುವುದು ಗುರುಸೂನು ರಣವನು
ನಿಮಿಷ ಚಿತ್ತೈಸುವುದು ಶೌರ್ಯ
ಭ್ರಮಿತರೀ ಪಾಂಚಾಲರನು ಬರಿಕೈದು ತೋರುವೆನು
ದ್ಯುಮಣಿ ಪರಿಯಂತೇಕೆ ರಶ್ಮಿಗೆ
ತಿಮಿರವಿದಿರೇ ನೀವು ನೋಟಕ
ರೆಮಗೆ ರಣ ದೆಖ್ಖಾಳವೆಂದನು ಕರ್ಣ ಗುರುಸುತಗೆ ೨೧

ಬಳಿಕ ಹೇಳುವುದೇನು ರಣದ
ಗ್ಗಳೆಯರವದಿರು ಮುತ್ತಿದರು ಕೈ
ಚಳಕಿಗರು ಕವಿದೆಚ್ಚರೀತನನೆಂಟು ದೆಸೆಗಳಲಿ
ಲುಳಿತ ಜಲಧರಪಟಲ ಜಠರದೊ
ಳಿಳಿದ ರವಿಮಂಡಲದವೋಲರೆ
ಘುಳಿಗೆ ಕರ್ಣನ ಕಾಣೆನೈ ನರನಾಥ ಕೇಳೆಂದ ೨೨

ಗಾಳಿಯೆತ್ತಲು ಘಾಡಿಸುವ ಮೇ
ಘಾಳಿಯೆತ್ತಲು ವೈರಿ ಸೇನೆಯ
ನಾಳಿಗಡಿತದ ನೊರೆಯ ರಕುತದ ನೂಕು ಧಾರೆಗಳ
ಏಳಿಗೆಯಲಾ ಛತ್ರಚಮರೀ
ಜಾಳ ನನೆದವು ಕರ್ಣನಂಬಿನ
ಕೋಲ ಕಡಿದೊಡನೊಡನೆ ಕೊಂದನು ಕೋಟಿ ಸಂಖ್ಯೆಗಳ ೨೩

ಮೇಲೆ ಬಿದ್ದುದು ಮತ್ತೆ ರಿಪು ಪಾಂ
ಚಾಲ ಬಲ ಸಾವುದಕೆ ಕಡೆಯಿ
ಲ್ಲಾಳ ಬರವಿಂಗರಿಯೆ ನಾನವಸಾನವನು ಮರಳಿ
ಕೋಲುಗಳ ತೆಗೆದೆಸುವನೋ ಶರ
ಜಾಳವನು ವಿರಚಿಸುವನೋ ಹಗೆ
ಯಾಳಿ ಮುರಿದುದ ಕಾಬೆನೆಸುಗೆಯ ಕಾಣೆ ನಾನೆಂದ ೨೪

ವೈರಿ ಪಾಂಚಾಲಕರೊಳೈವರು
ಧಾರುಣೀಶ್ವರರಸುವ ಬಿಟ್ಟರು
ಚಾರು ಚಾಪಳ ಚಾತುರಂಗದ ನಿಧನ ನಿರ್ಣಯವ
ಆರು ಬಲ್ಲರು ಖಾತಿಯಲಿ ಜ
ಝ್ಝಾರರೆದ್ದುದು ಮತ್ತೆ ಸಕಲ ಮ
ಹಾರಥರು ನೂಕಿದರು ಲಗ್ಗೆಯ ಲಳಿಯ ಲಹರಿಯಲಿ ೨೫

ನಕುಲ ಧೃಷ್ಟದ್ಯುಮ್ನ ಸುತ ಸೋ
ಮಕ ಶಿಖಂಡಿ ಯುಯುತ್ಸು ವರಸಾ
ತ್ಯಕಿ ಶತಾನೀಕಾಖ್ಯ ಪ್ರತಿವಿಂಧ್ಯಕರು ಶ್ರುತಕೀರ್ತಿ
ಸಕಲ ಕೈಕೆಯ ಪಾಂಡ್ಯ ಶಿಶುಪಾ
ಲಕಸುತ ಯುಧಾಮನ್ಯು ಸಹದೇ
ವಕರು ಸನ್ನಾಹದಲಿ ಕವಿದುದು ವರ ಮಹಾರಥರು ೨೬

ಭೀಮ ಫಲುಗುಣ ಕೃಷ್ಣ ಧರ್ಮಜ
ರೀ ಮಹಾರಥರಲ್ಲದಿತರ
ಸ್ತೋಮವಳವಿಯ ಮೀರಿ ಕವಿದುದು ಕರ್ಣನಿದಿರಿನಲಿ
ಹಾ ಮಹಾದೇವಾ ಸಮಸ್ತ ಸ
ನಾಮರಥಿಕರು ಕರ್ಣನೊಬ್ಬನ
ಕಾಮಿಸಿದರೈ ಕದನಕವನೀಪಾಲ ಕೇಳೆಂದ ೨೭

ಉರಿಯ ಪೇಟೆಗಳಲಿ ಪತಂಗದ
ಸರಕು ಮಾರದೆ ಮರಳುವುದೆ ನಿ
ಬ್ಬರದ ಬಿರುದಿನೊಳೀ ಮಹಾರಥ ರಾಜಿ ರವಿಸುತನ
ಕೆರಳಿಚಿದರೈ ಕೇಣವಿಲ್ಲದೆ
ಬೆರಸಿದರು ಬೇಸರಿಸಿದರು ಹೊಡ
ಕರಿಸಿದರು ಹೊಯ್ದರು ವಿಭಾಡಿಸಿದರು ವಿಘಾತಿಯಲಿ ೨೮

ತಮ್ಮ ಸತ್ವೋದಧಿಯ ತೋರಿದ
ರೊಮ್ಮೆ ಮೊಗೆದನು ಬಳಿಕ ರಾಯನ
ಸೊಮ್ಮಿನವರಲಿ ಸೀಳಿದನು ಹದಿನೆಂಟು ಸಾವಿರವ
ಹಮ್ಮುಗೆಯ ಕೈಮನದ ಹೊಣಕೆಯ
ಹಮ್ಮಿನುಬ್ಬಟೆಯುವರ ಪಾರ್ಥನ
ತಮ್ಮದಿರ ಸಾಹಸಕೆ ಸೇರಿಸಿದನು ಪಲಾಯನವ ೨೯

ರಥ ಮುರಿದು ಬಲು ಘಾಯದಲಿ ಸು
ವ್ಯಥಿತ ಸಾತ್ಯಕಿ ಹಿಂಗಿದನು ಸಾ
ರಥಿಗಳಳಿವಿನಲೋಡಿದರು ಸುತಸೋಮಕಾದಿಗಳು
ಪೃಥುವಿಗೊರಗಿತು ನಾಲ್ಕು ಸಾವಿರ
ರಥಿಗಳುಳಿದ ಪದಾತಿ ಗಜ ಹಯ
ರಥವ ಕೆಡಹಿದನೆನಿತನೆಂಬುದನರಿಯೆ ನಾನೆಂದ ೩೦

ಮುರಿದು ಮತ್ತೆ ಮಹಾರಥರು ಸಂ
ವರಿಸಿಕೊಂಡು ಶಿಖಂಡಿ ಸಾತ್ಯಕಿ
ವರನಕುಲ ಸಹದೇವ ಧೃಷ್ಟದ್ಯುಮ್ನ ಸೃಂಜಯರು
ಸರಳ ಬಿರುಬಿನ ಬಾಯ ಬೈಗುಳ
ಬಿರುದುಗಹಳೆಯ ಬಿಂಕದವರು
ಬ್ಬರಿಸಿ ಕವಿದರು ಕರ್ಣನಾವೆಡೆ ತೋರು ತೋರೆನುತ ೩೧

ನುಸಿಗಳಿರ ನಿಮಗೇಕೆ ಕರ್ಣನ
ಘಸಣಿ ನಾವೇ ನಿಮ್ಮ ನೆತ್ತಿಯ
ಮುಸಲವಲ್ಲಾ ಫಡ ನಕುಲ ಸಹದೇವ ನಿಲ್ಲೆನುತ
ಮುಸುಡ ಹೊಗರಿನ ಕಣ್ಣ ಕೆಂಪಿನ
ವಿಷಮುರಗ್ಗದ ಕರ್ಣತನುಜರು
ಮಸಗಿ ಮುಂಚುವ ಮೋಹರವನಡಹಾಯ್ದು ತರುಬಿದರು ೩೨

ಏನ ಹೇಳುವೆನವರ ಶರ ಸಂ
ಧಾನ ಸೌರಂಭವನು ಕಲಿ ವೃಷ
ಸೇನ ವೀರ ಸುಷೇಣರೇರಿದರೆಚ್ಚರತಿಬಳರ
ಭಾನುಸುತನಿಂದೆಂಟು ಮಡಿಯ ಸ
ಘಾನರಹಿರೋ ಪೂತು ಮಝು ಎನು
ತಾ ನಿಖಿಳ ರಥನಿಕರ ಕವಿದುದು ಮತ್ತೆ ಸಂದಣಿಸಿ ೩೩

ಕಡಿದು ಬಿಸುಟರು ತೇರುಗಳನಡ
ಗೆಡಹಿದರು ಹೇರಾನೆಗಳ ಕೆಲ
ಕಡೆಯಲೌಕುವ ಕುದುರೆ ನನೆದವು ಬಸಿವ ನೆತ್ತರಲಿ
ತುಡುಕಿದರೆ ಕಾಲಾಳನಟ್ಟೆಯ
ನುಡಿಯಲರಿಯೆನು ಕರ್ಣತನುಜರ
ಕಡುಹು ನಕುಲಾದಿಗಳ ಬೆದರಿಸಿತರಸ ಕೇಳೆಂದ ೩೪

ತಿರುಗಿ ಕಂಡನು ಭೀಮನೆಲೆ ತರು
ವಲಿಗಳಿರ ಕೊಂಡಾಡಿ ಕಾದುವ
ದೊರೆಗಳೇ ನಕುಲಾಂಕ ತೆಗೆ ಸಹದೇವ ಸಾರೆನುತ
ಸರಳ ಕೆನ್ನೆಯ ಬಿಗಿದ ಹುಬ್ಬಿನ
ಮುರಿದ ಮೀಸೆಯಲೌಡುಗಚ್ಚಿನ
ಕುರುಕುಲಾಂತಕ ಭೀಮ ಬಿಟ್ಟನು ಸೂಠಿಯಲಿ ರಥವ ೩೫

ರಾಯ ದಳದಲಿ ಸೆಣಸಲಿದು ಕ
ಜ್ಜಾಯವೇ ಮಕ್ಕಳಿರ ಮನ್ನಿಸಿ
ಕಾಯಿದೆನು ಬಳಿಕೇನು ನಿಮ್ಮಂಘವಣೆ ಲೇಸಾಯ್ತು
ಸಾಯಲೇತಕೆ ಹಿಂಗಿ ನಿಮ್ಮನು
ನೋಯಿಸುವುದನುಚಿತವು ಸೇನಾ
ನಾಯಕನು ನಿಮ್ಮಯ್ಯನಾತನ ಕಳುಹಿ ನೀವೆಂದ ೩೬

ಮರುಳಲಾ ಪವಮಾನಸುತ ನಿ
ನ್ನೊರೆಗೆ ಪಡಿಯೊರೆ ತೂಕ ತೂಕಕೆ
ಸರಿಸರಾವಿರೆ ಕನಕಗಿರಿಪರಿಯಂತ ಮಾತೇಕೆ
ತರಣಿಬಿಂಬದ ತತ್ತಿಗಳನು
ತ್ತರಿಸಿ ತೋರುವ ತಿಮಿರವುಂಟೇ
ತರಹರಿಸಿ ತೋರಾ ಎನುತ ಕವಿದೆಚ್ಚರನಿಲಜನ ೩೭

ಗಳಹತನವಿದು ನಿಮ್ಮ ತಂದೆಯು
ಗಳಿಸಿದರ್ಥವು ನಿಮ್ಮ ಬೀಯಕೆ
ಬಳಸುವಿರಿ ತಪ್ಪಾವುದೆನುತೆಚ್ಚಂಬ ಹರೆಗಡಿದು
ಹಿಳುಕ ಕವಿಸಿದನೀತನೀತನ
ಹಿಳುಕ ಮುರಿದೊಡನೆಚ್ಚು ಭೀಮನ
ಕೆರಳಿಚಿದರೈ ಕರ್ಣನಂದನರರಸ ಕೇಳೆಂದ ೩೮

ಬಾಲರೆಂದೇ ಮನ್ನಿಸಿದರೆ ಛ
ಡಾಳಿಸಿತೆ ಚಪಳತ್ವವಾಗಲಿ
ಖೂಳರಾವೈ ಸಲೆಯೆನುತ ನಾರಾಚ ಶತಕದಲಿ
ಬೀಳಲೆಚ್ಚನು ರಥವ ಗಜ ಹಯ
ಜಾಳವನು ಸಾರಥಿಗಳನು ಬಲು
ಗೋಲೊಳಿರೊಬ್ಬಳೊಬ್ಬನನು ಕೆಡೆಯೆಚ್ಚು ಬೊಬ್ಬಿರಿದ ೩೯

ಶಿವಶಿವಾ ಕರ್ಣಾತ್ಮಜನೆ ಮಡಿ
ದವನು ದಳಪತಿ ಮಡಿದನೋ ಕೌ
ರವನ ಕೇಡೋ ಹಾಯೆನುತ ಕುರುಸೇನೆ ಕಳವಳಿಸೆ
ಕವಿದರಶ್ವತ್ಥಾಮ ಕೃಪ ಕೌ
ರವ ಶಕುನಿ ದುಶ್ಶಾಸನಾದಿಗ
ಳವಗಡಿಸಲನಿಬರನು ತೊಲಗಿಸಿ ಕರ್ಣನಿದಿರಾದ ೪೦

ಆತುಕೊಳ್ಳೈ ಭ್ರೂಣಹತ್ಯಾ
ಪಾತಕಿಯೆ ಪಡಿತಳಿಸು ವಿಶಿಖ
ವ್ರಾತವಿವೆಯೆನುತೆಚ್ಚನಿನಸುತನನಿಲನಂದನನ
ಆತುಕೊಂಬರೆ ಸರಿಸನಲ್ಲ ವಿ
ಜಾತಿಯಲಿ ಸಂಭವಿಸಿದನೆ ಛಡ
ಸೂತನಂದನ ಎನುತ ಕರ್ಣನನೆಚ್ಚನಾ ಭೀಮ ೪೧

ಎಚ್ಚರೊಡನೊಡನೆಚ್ಚ ಬಾಣವ
ಕೊಚ್ಚಿದನು ಕಲಿ ಕರ್ಣನಾತನ
ನೆಚ್ಚನಂಬಿನ ಮೇಲೆ ನೂಕಿದವಂಬು ವಹಿಲದಲಿ
ಎಚ್ಚು ಕವಿಸಿದಡವನು ಪವನಜ
ನೆಚ್ಚಡವ ಪರಿಹರಿಸಿ ರವಿಸುತ
ನೆಚ್ಚಡಿಬ್ಬರು ಕಾದಿದರು ಕೈಮೈಯ ಮನ್ನಿಸದೆ ೪೨

ಭಾರಿಯಂಕವು ದಳಪತಿಗೆ ಪಡಿ
ಸಾರಿಕೆಯ ಭಟರಿಲ್ಲಲಾ ಪರಿ
ವಾರಕಿದು ಪಂಥವೆ ಎನುತ ಕುರುರಾಯ ಮೂದಲಿಸೆ
ಕೂರಲಗಿನಂಬುಗಿದು ಬಳಿಯ ಮ
ಹಾರಥರ ಕೈವೀಸಿ ರವಿಸುತ
ಸಾರೆನುತ ಕೆಣಕಿದನು ದುಶ್ಶಾಸನನು ಪವನಜನ ೪೩

ಎಲವೊ ಕರ್ಣಾತ್ಮಜನ ಹೊಯ್ದ
ಗ್ಗಳಿಕೆಯಲಿ ಹೊರೆಯೇರದಿರು ಪಡಿ
ಬಲಕೆ ಕರಸಾ ಕೃಷ್ಣ ಪಾರ್ಥರ ನಿನ್ನಲೇನಹುದು
ಬಳಿಯ ಬಿಗುಹಿನ ಬಿಂಕ ನಿನ್ನಯ
ತಲೆಗೆ ಬಹುದಾವರಿಯೆವೆನುತತಿ
ಬಳನನೆಚ್ಚನು ನಿನ್ನ ನಂದನನರಸ ಕೇಳೆಂದ ೪೪

ತಗರು ಮುಳಿದಾರಿದರೆ ತೋಳನು
ತೆಗೆದು ಜೀವಿಸಲರಿವುದೇ ನಾ
ಲಗೆಯ ವೀರರು ನೀವು ಮೂಢರು ನಾವು ನುಡಿಗಳಲಿ
ಉಗಿದಡಾಯ್ದದ ಮೊನೆಯ ತುದಿ ನಾ
ಲಗೆಗಳಲಿ ಮಾತಾಡಬಲ್ಲರೆ
ಸೊಗಸುವೆವು ನಾವೆನುತ ಪವನಜನೆಚ್ಚನರಿಭಟನ ೪೫

ಪವನಸುತನೆಚ್ಚಂಬ ಹರೆಗಡಿ
ದವಿರಳಾಸ್ತ್ರವನೀತ ಕವಿಸಿದ
ನಿವನ ಬಳಿಯ ಮಹಾರಥರು ಸೂಸಿದರು ಶರವಳೆಯ
ರವಿಯ ಕೈಕತ್ತಲೆಯ ಹೊರಳಿಯ
ತಿವಿಗುಳಿಗೆ ತೆರಳುವುದೆ ರಿಪು ಶರ
ನಿವಹವನು ಕಡಿಯೆಚ್ಚು ಕೆಡಹಿದನಾ ಮಹಾರಥರ ೪೬

ಸಿಕ್ಕಿದರೆ ಬಳಿಕೇನು ತಾಯಿಗೆ
ಮಕ್ಕಳಾಗರು ನಿನ್ನ ತನಯನ
ನಿಕ್ಕಿ ಹಾಯ್ದರು ಹಿಂಡೊಡೆದು ನೀ ಸಾಕಿದವರೆಲ್ಲ
ಹೊಕ್ಕು ಬಳಿಕೊಂದೆರಡು ಪಸರದ
ಲುಕ್ಕುಡಿಯಲೊದಗಿದನು ನಿನ್ನವ
ನೆಕ್ಕತುಳದಲಿ ಸರಿಮಿಗಿಲ ಕಾದಿದನು ಹಗೆಯೊಡನೆ ೪೭

ತೇರು ಹುಡಿಹುಡಿಯಾಗಿ ರಣದಲಿ
ಸಾರಥಿಯ ತಲೆ ಹೋಗಿ ಕಾಲಿನ
ಲಾರುಭಟೆಯಲಿ ನಿನ್ನ ಮಗನೆಸುತಿರ್ದನನಿಲಜನ
ಸಾರು ನೀ ಸಾರೆನುತ ಕರ್ಣಕು
ಮಾರನಡಹಾಯಿದನು ಭೀಮನ
ಭೂರಿ ಬಾಣದ ಪಂಜರವ ಭಂಜಿಸುತ ವಹಿಲದಲಿ ೪೮

ಎಲೆಲೆ ಕರ್ಣ ಕುಮಾರನೋ ಪಡಿ
ಬಲವ ಕರೆಯೋ ಬಾಲನೊಬ್ಬನೆ
ನಿಲುವುದರಿದೋ ಸ್ವಾಮಿದ್ರೋಹರ ಹಿಡಿದು ನೂಕೆನುತ
ಉಲಿಯೆ ಕೌರವರಾಯನುಬ್ಬಿದ
ಕಳಕಳದ ಬಹುವಿಧದ ವಾದ್ಯದ
ದಳದ ದೆಖ್ಖಾದೆಖ್ಖಿಯಲಿ ಕಲಿಕರ್ಣ ನಡೆತಂದ ೪೯

ಹನ್ನೊಂದನೆಯ ಸಂಧಿ

ಸೂ. ರಾಯ ರಿಪುರವಿರಾಹು ಪಾಂಡವ
ರಾಯ ಸೇನಾಜಲಧಿ ವಡಬನ
ಜೇಯ ರವಿನಂದನನು ಗೆಲಿದನು ಧರ್ಮನಂದನನ

ಮಂಗನ ತೊಲಗಿಸಿ ಮಿಂಗುವ ಚೂಣಿಯ
ತೆಗಸಿ ಬಲವಂಕದ ಭಟಾಳಿಗೆ
ಮೊಗದ ಸನ್ನೆಯ ಮಾಡುತೆಡವಂಕದ ಕಟಾಕ್ಷದಲಿ
ತೆಗೆದು ತೂರಂಬಿನಲಿ ಭೀಮನ
ಬಿಗಿದನಾವೆಡೆ ಧರಣಿಯಾವೆಡೆ
ಗಗನವಾವೆಡೆ ದೆಸೆಗಳೆನೆ ತುರುಗಿದವು ಶರಜಾಳ ೧

ಭೀಮನೋ ನಿಮಿಷಾರ್ಧದಲಿ ನಿ
ರ್ನಾಮನೋ ತಡವೇಕೆ ರಿಪುವೇ
ಕಾಮನೋ ಕರ್ಣನೇ ಕಪರ್ದಿ ವಿಚಾರವೇಕೆನುತ
ತಾಮಸದ ಭುಲ್ಲವಣೆಯಲಿ ಕುರು
ಭೂಮಿಪನ ಬಲವೊದರಿ ವೈರಿ
ಸ್ತೋಮ ಕಂಡುಂದು ಪವನತನಯನ ರಣದ ಭಾರಣೆಯ ೨

ಉಲಿವುತಿದೆ ಕೌರವನ ಸೇನಾ
ಜಲಧಿ ಹರುಷದಲಿತ್ತಲನಿಲಜ
ನಳುಕದೊಬ್ಬನೆ ಕಾದುತೈದನೆ ಕರ್ಣನೊಡನೆನುತ
ತಳಿತ ಧವಳಚ್ಛತ್ರ ಚಮರಾ
ವಳಿಯ ಮಧ್ಯದಲವನಿಪತಿ ನಿಜ
ಬಲಸಹಿತ ನೂಕಿದನು ಬಹುವಿಧ ವಾದ್ಯ ರಭಸದಲಿ ೩

ಒಂದು ಕಡೆಯಲಿ ಭೀಮ ಸಾತ್ಯಕಿ
ಯೊಂದು ಕಡೆಯಲಿ ನಕುಳ ದ್ರೌಪದ
ರೊಂದು ಕಡೆಯಲಿ ಚೇಕಿತಾನ ಶಿಖಂಡಿ ಶೃಂಜಯರು
ಒಂದು ಕಡೆ ಸಹದೇವನೀ ಪರಿ
ಹಿಂದೆ ಮುಂದಿಕ್ಕೆಲದೊಳೀತನ
ಸಂದಣಿಸಿ ಮುತ್ತಿದರು ಮುಕ್ಕುರಿಕಿತ್ತು ರಿಪುಸೇನೆ ೪

ರಾಯದಳವುಬ್ಬೆದ್ದುದೋ ಪಡಿ
ನಾಯಕರನಪ್ಪಳಿಸುವೆನು ರಿಪು
ವಾಯುಜನ ಗಾಢಣೆಯ ಗರ್ವಗ್ರಹವ ಕಳಚುವೆನು
ರಾಯಕೌರವ ಸಹಿತ ನೀವ್ ನಿ
ಮ್ಮಾಯತದಲಿರಿಯೆನುತ ಸಾರದ
ಸಾಯಕದ ಸರಿವಳೆಯ ಸುರಿದನು ಭಾನುಸುತ ಮುಳಿದು ೫

ಧನುವಿನಲಿ ಸಾತ್ಯಕಿಯ ಮಾದ್ರೀ
ತನುಜರನು ತೇರಿನಲಿ ದ್ರುಪದನ
ತನಯನನು ಸಾರಥಿಗಳಲಿ ಜೋಡಿನಲಿ ಪವನಜನ
ಬಿನುಗರವರವರಂಗದಲಿ ಕೈ
ಮನವ ಖಂಡಿಸಿ ಸಕಲ ರಿಪು ಸಾ
ಧನವನೊಬ್ಬನೆ ಕರ್ಣ ಗೆಲಿದನು ನೃಪತಿ ಕೇಳೆಂದ ೬

ಮುಂದುಗೆಟ್ಟುದು ದೊರೆಗಳೆನೆ ರವಿ
ನಂದನನ ರಥಕಾಗಿ ಸೇನಾ
ವೃಂದ ಕವಿದುದು ಚೈದ್ಯ ಶೃಂಜಯ ಮತ್ಸ್ಯ ಕೈಕೆಯರು
ಸಂದಣಿಸಿ ಪಾಂಚಾಲ ಕೇರಳ
ವಿಂದ ಮಗಧ ದ್ರವಿಡ ವಂಗ ಪು
ಳಿಂದ ಬಲ ಬಹಳಾಬ್ಧಿ ಮುತ್ತಿತು ಮತ್ತೆ ಮೂದಲಿಸಿ ೭

ಒದೆವ ಮಂದರವನು ತರಂಗದ
ಲುದಧಿ ಹೊಯ್ವಂದದಲಿ ಹೊಕ್ಕವು
ಕುದುರೆ ತೂಳಿದವಾನೆ ಕವಿದರು ರಥಿಕರೊಳಬಿದ್ದು
ಒದರಿ ವಿವಿಧಾಯುಧದ ಕಾಲಾ
ಳೊದಗಿ ಕೈದೋರಿಸಿದರಿನಿಬರ
ಸದೆದನೊಬ್ಬನ ಕರ್ಣ ಕೆದರಿದನಾ ಮಹಾಬಲವ ೮

ಬೀಳುವಂಬಿನ ಹೊಯ್ವ ಖಡ್ಗದ
ತೂಳುವಾನೆಯ ತೂಕಿ ತಾಗುವ
ಶೂಲಿಗೆಯ ತುಂಡಿಸುವ ವಂಕಿಯ ನೆಡುವ ಬಲ್ಲೆಹದ
ಸೀಳುವಿಟ್ಟಿಯ ಮುರಿವ ಪರಿಘದ
ಪಾಳಿಸುವ ಪರಶುವಿನ ಧಾಳಾ
ಧೂಳಿ ಮುಸಗಿತು ಮತ್ತೆ ಕರ್ಣನ ರಥದ ಬಳಸಿನಲಿ ೯

ತುರಗ ರಾವುತರಿಗವರ ಖಡ್ಗಕೆ
ಕರಿಗೆ ಜೋಧರಿಗವರ ಶಸ್ತ್ರಕೆ
ವರ ರಥಕೆ ಸಾರಥಿಗೆ ರಥಿಕರ ಚಾಪ ಮಾರ್ಗಣಕೆ
ಸರಳನೊಂದೊಂದೆಚ್ಚು ನೆರೆ ಕ
ತ್ತರಿಸಿದನು ಕಾಲಾಳನೊಂದೇ
ಸರಳಲೈನೂರಳಿಯೆ ಕೊಂದನು ಕರ್ಣ ಪರಬಲವ ೧೦

ನಕುಳನನು ಹದಿನೆಂಟರಲಿ ಸಾ
ತ್ಯಕಿಯನೈದಂಬಿನಲಿ ಸಹದೇ
ವಕನನೊಂಬತ್ತರಲಿ ಭೀಮನನೆಂಟು ಕೋಲಿನಲಿ
ಸಕಲ ರಥಿಕರನೆಲ್ಲ ಶತ ಸಾ
ಯಕದಲೊರಗಿಸಿ ಚೈದ್ಯ ಪಾಂಚಾ
ಲಕರ ಥಟ್ಟಿನೊಳೊಕ್ಕಲಿಕ್ಕಿದನರಸ ಕೇಳೆಂದ ೧೧

ಅದು ಬಳಿಕ ಹೇರಾಳ ದಳವಾಂ
ತುದು ಮಹಾರಥರೆಸುಗೆಯಲಿ ಹೂ
ಳಿದುದು ನಭ ನುಗ್ಗಾಯ್ತು ನೆಲ ಚತುರಂಗ ಪದಹತಿಗೆ
ಕುದುರೆ ಕರಿ ತೇರಾಳ ತೆಕ್ಕೆಯ
ಹೊದರಿನಲಿ ಮುಳುಗಿದನು ನಿನ ವ
ನದುಭುತವನೇನೆಂಬೆನೈ ಧೃತರಾಷ್ಟ್ರ ಕೇಳೆಂದ ೧೨

ತಾರಕನ ಥಟ್ಟಿನಲಿ ಹರನ ಕು
ಮಾರ ಹೊಕ್ಕಂದದಲಿ ವೃತ್ರನ
ತಾರಕಾಕ್ಷನ ಜೋಡಿಯನು ಜಂಭಾರಿ ತರಿವಂತೆ
ಆರಿದೆಚ್ಚನು ಶಿವಶಿವಾ ಕಾ
ಮಾರಿಯೋ ಪಾಂಡವ ಬಲದ ಹೆ
ಮ್ಮಾರಿಯೋ ನಿನ್ನಾನೆ ಸವರಿತು ವೈರಿಭಟವನವ ೧೩

ವಾಘೆ ಸರಿಸದ ರಾವುತೋ ದೃಢ
ವಾಘೆಯೆನುತೇರಿದ ಹಯೌಘದ
ಮೇಘಪಟಲದ ಪಾಡೆ ಘಡಯೆನೆ ಹೊಕ್ಕ ಗಜದಳದ
ಲಾಘವದ ಲುಳಿಸಾರತನದ ಶ
ರೌಘ ರಚನೆಯ ರಥಿಕಯೂಥ
ಶ್ಲಾಘೆಗಳ ನಾ ಕಾಣೆನೊಂದು ವಿಘಳಿಗೆ ಮಾತ್ರದಲಿ ೧೪

ಬೇರೆ ಲಗ್ಗೆಯ ಮಾಡಿ ಭೋಯೆಂ
ದೇರಿ ಹಳಚುವ ರಭಸ ಕಿವಿಗಳ
ಕೀರಿದುದು ಬಳಿಕವರು ಕರ್ಣನ ತಾಗಿದಾಕ್ಷಣಕೆ
ತಾರು ಥಟ್ಟಿಗೆ ಹರೆದು ರೌದ್ರವ
ಹಾರಿದವು ಕಣ್ಣುಗಳು ರಿಪುಬಲ
ದೇರ ನಾಲಗೆ ಹೊಗಳಲಮ್ಮದು ನೃಪತಿ ಕೇಳೆಂದ ೧೫

ಆಳ ಕೊಂದನು ಲಕ್ಕವನು ತುರ
ಗಾಳಿಯನು ನಾಲ್ಸಾವಿರವ ಶುಂ
ಡಾಲ ಘಟೆಗಳ ತುಂಡಿಸಿದನೊಂದೆರಡು ಸಾವಿರವ
ಮೌಳಿಮಣಿಯಲಿ ಹೊಳೆಹೊಳೆವ ನರ
ಪಾಲರನು ನಾನೂರರೋಲೆಯ
ಸೀಳಿದನಲ್ಲೈ ಚೈದ್ಯ ಪಾಂಚಾಲರಲಿ ಕಲಿಕರ್ಣ ೧೬

ತೆರಳಿದನು ಸಹದೇವ ನಸು ಪೈ
ಸರಿಸಿದನು ನಕುಳನು ಶಿಖಂಡಿಯ
ಕರಣ ತಲೆಕೆಳಕಾಯ್ತು ಕಾಣೆನು ಸಾತ್ಯಕಿಯ ರಥವ
ಮುರಿವ ಕಂಡೆನು ಭೀಮ ದುಗುಡದ
ಭರದಲಿದ್ದನು ಮಿಕ್ಕ ಬಲ ನಾ
ಲ್ಕೆರಡೊ ನಾಲ್ಕೊಂದೋ ನಿಧಾನಿಸಲರಿಯೆ ನಾನೆಂದ ೧೭

ಇಟ್ಟಣಿಸಿಕೊಂಡೊತ್ತಿ ರಾಯನ
ಥಟ್ಟ ಹೊಕ್ಕನು ಜರುಹಿದನು ಜಗ
ಜಟ್ಟಿ ಜೋಡಿಸಿದಂಗಸುಯ್ವಾನದ ಮಹಾರಥರ
ಕೆಟ್ಟ ದಳವನಘಾಟದವರೊಳ
ಗಿಟ್ಟು ಕೊಳ್ಳರದೇನು ರಾಯನ
ಮುಟ್ಟುತಿದಲಾ ರೌದ್ರರಣವೆನುತೆಚ್ಚನಾ ಕರ್ಣ ೧೮

ಕುರುಬಲದ ಸುಮ್ಮಾನ ಕಹಳೆಯ
ಬಿರಿವ ನಿಸ್ಸಾಳದ ನೃಪಾಲರ
ಹರುಷ ಪುಳಕದ ಭುಜದ ಹೊಯ್ಲಿನ ಬೊಬ್ಬೆಯಬ್ಬರದ
ಅರಿಬಲದೊಳಕಟಕಟ ವಿಧಿ ನಿ
ಷ್ಕರುಣಿ ಹಾಹಾಯೆಂಬ ರವದ
ಬ್ಬರದ ನಿಬ್ಬರ ಕೇಳಲಾದುದು ನೃಪತಿ ಕೇಳೆಂದ ೧೯

ಎಲೆಲೆ ರಾಯನ ಮೇಲೆ ಬಿದ್ದುದು
ಕಲಹವಕಟಾ ಹೋಗಬೇಡಿ
ಟ್ಟಳಿಸಿದವ ಹಗೆ ನಮ್ಮ ಭೀಷ್ಮ ದ್ರೋಣನಿವನಲ್ಲ
ಅಳುಕದಿರಿ ಕವಿಕವಿಯೆನುತ ಹೆ
ಬ್ಬಲ ಸಘಾಡದಲೌಕಿ ಕರ್ಣನ
ಹೊಲುಬುಗೆಡಿಸಿದುದಂಬುಗಳ ಸಾರಾಯ ಸೋನೆಯಲಿ ೨೦

ಕೊಂಬನೇ ಬಳಿಕೀ ಮಹಾರಥ
ರಂಬುಗಿಂಬನು ನಿಮ್ಮ ಹಿರಿಯರ
ಡೊಂಬಿನಾಹವವಲ್ಲ ತಮತಮಗೆ ತುಡುಕುವಡೆ
ಅಂಬುನಿಧಿ ಮಕರಂದವಾದರೆ
ತುಂಬಿಯಾಗನೆ ವಡಬನೀತನ
ನೆಂಬ ಖುಲ್ಲರು ಸುಭಟರೇ ಧೃತರಾಷ್ಟ್ರ ಕೇಳೆಂದ ೨೧

ರಾಯದಳದೊಳು ಮಡಿವ ಕರಿವಾ
ನಾಯುಜಕೆ ಕಡೆಯಿಲ್ಲ ರಥಿಕರು
ಪಾಯದಳವೆನಿತಳಿದುದೋ ನಾನರಿಯೆನದರೊಳಗೆ
ಬಾಯಬಿಟ್ಟುದು ಸೇನೆ ಕಡಿಖಂ
ಡಾಯತದ ಹೆಣನೊಟ್ಟಲಿನ ಮುರಿ
ದಾಯುಧದ ಸಂದಣಿಯೆ ನಿಲಿಸಿತು ಬಳಿಕ ರವಿಸುತನ ೨೨

ತರಿದ ಹೊಸ ಕುಮ್ಮರಿಯೊಳಗೆ ರಥ
ಹರಿಯಬಲ್ಲುದೆ ಕರ್ಣ ನಾವಿಂ
ದರಿದೆವೈ ನೀ ನೆಟ್ಟನೋಲೆಯಕಾರನೆಂಬುದನು
ಇರಿತಕಿವರಾರಿದಿರಹರು ನಿ
ನ್ನುರವಣೆಯನಾರಾನುವರು ಮ
ತ್ಸರವ ಬಿಸುಟೆನು ಪೂತು ರವಿಸುತ ಎಂದನಾ ಶಲ್ಯ ೨೩

ಕಾಲಿಡುವಡಿದು ದುರ್ಗವೆನುತಾ
ಸಾಲಬಿಟ್ಟನು ದಕ್ಷಿಣಕೆ ದು
ವ್ವಾಳಿಸಿದನಾ ರಥವನವನೀಪತಿಯ ಮೋಹರಕೆ
ಏಳು ಕಲಿಯಾಗಿನ್ನು ಕೆಲಬಲ
ದಾಳ ಹಾರದಿರೆನುತ ರಾಯನ
ಮೇಲೆ ಕರೆದನು ಕರ್ಣ ಖತಿಯಲಿ ಕಣೆಯ ಬಿರುವಳೆಯ ೨೪

ಗಳಹದಿರು ಕೆಲಬಲದ ಹಂಗಿನ
ಬಳಕೆಯೇ ಘಡ ಸೂತಸುತ ಬಾ
ಳ್ಗೊಲೆಯ ಬಾಹಿರ ಬಿನುಗ ಬೆದರಿಸಿ ಬರಿದೆ ಬೆರತೆಯಲ
ಉಲುಕಿದರೆ ನಾಲಗೆಯ ತೊಡಬೆಯ
ಕಳಚುವೆನು ನಿಲ್ಲೆನುತಲಾ ಕುಂ
ಡಳಿತ ಕಾರ್ಮುಕನೆಚ್ಚು ಕಡಿದನು ಕರ್ಣನಂಬುಗಳ ೨೫

ಆಲಿಕಲುಗಳು ಸಿಡಿಲಮರಿಗಳ
ಮೇಲುವಾಯ್ದವು ಗಡ ಯುಧಿಷ್ಠಿರ
ನಾಳುತನದಲಿ ನಮ್ಮ ಜರೆದನು ಶಲ್ಯ ನೋಡೆನುತ
ಬೋಳೆಯುಂಬೈದರಲಿ ರಾಯನ
ತೋಳನೆಚ್ಚನು ಜಡಿವ ಜೋಡಿನ
ಮೇಲೆ ಮುರಿದವು ಬಾಣ ನೃಪ ಮಗುಳೆಚ್ಚನಿನಸುತನ ೨೬

ಬಲುಹು ಕೈಗಳಲುಂಟೆ ತೋರುವು
ದುಲಿವ ಹೊತ್ತದು ಬೇರೆನುತ ಮುಂ
ಕೊಳಿಸಿ ಕರ್ಣನ ಶರವ ಕಡಿದೀರೇಳು ಬಾಣದಲಿ
ಅಳುಕದೆಚ್ಚನು ತೇರು ತುರಗಾ
ವಳಿಯ ಧವಳಚ್ಛತ್ರ ಚಮರಿಯ
ನಿಳುಹಿದನು ಧ್ವಜದಂಡ ಸಹಿತೈವತ್ತು ಬಾಣದಲಿ ೨೭

ಬೇಗೆವರಿ ಬೆಳುದಿಂಗಳಲಿ ನಮು
ಗೀಗ ತೋರಿತಲಾ ಎನುತ ಮುರಿ
ದಾಗಳೇ ಸಂಧಿಸಿದ ತನ್ನಯ ಹಯ ರಥಾದಿಗಳ
ಈಗಲರಿಯಾದರೆಯೆನುತ ಕಿವಿ
ಗಾಗಿ ತೆಗೆದನು ನಿಶಿತಬಾಣವ
ತೂಗಿ ಬಿಟ್ಟನು ಬೀಳೆನುತ ಕಲಿಕರ್ಣ ಬೊಬ್ಬಿರಿದ ೨೮

ಅರಸ ಕೇಳಾಶ್ಚರಿಯವನು ರಿಪು
ಶರವನೆಡೆಯಲಿ ಕಡಿದು ರವಿಸುತ
ನುರವನೆಚ್ಚನು ಧರ್ಮನಂದನನೆಂಟು ಬಾಣದಲಿ
ಬಿರಿಯೆ ಬಲುವಜ್ರಾಂಗಿ ಹಾಯ್ದವು
ಗರಿ ಸಹಿತಲುಚ್ಚಳಿಸಿ ನೆಲದಲಿ
ಸರಳು ನೆಟ್ಟವು ಕರ್ಣ ನನೆದನು ರುಧಿರಧಾರೆಯಲಿ ೨೯

ತೂಗುವೊಡಲರೆಮುಚ್ಚುಗಂಗಳ
ಸೂಗುರಿಸುವಂಗದಲಿ ತಾಳದ
ಮೂಗಿನುಸುರಿನ ಮೂರ್ಛೆಯಲಿ ರವಿಸೂನು ಮೈಮರೆದ
ಆಗಳಂತಿರೆ ಹೊರೆಯವರ ಕೈ
ಲಾಗುಮದ್ದಿನ ಕಮಳಜಲ ಮುಂ
ತ್ರಾಗಮದಲೆಚ್ಚತ್ತನೊಂದೇ ನಿಮಿಷದಲಿ ಕರ್ಣ ೩೦

ಬಸಿವ ರಕುತವ ತೊಳೆತೊಳೆದು ಮುಂ
ತ್ರಿಸಿದ ಸಲಿಲವ ಮುಕ್ಕುಳಿಸಿಯುಗು
ಳ್ದಸಮ ಸಾಹಸಿ ಕೊಂಡ ವರ ಕರ್ಪುರದ ವೀಳೆಯವ
ಮುಸುಡ ದುಗುಡದ ತನ್ನ ಸೇನಾ
ಪ್ರಸರಕಭಯವನಿತ್ತು ಮಾರಿಯ
ಮುಸುಕನುಗಿದನ ತೋರೆನುತ ತಾಗಿದನು ಭೂಪತಿಯ ೩೧

ಮುಂದಿ ಕವಿಯಲಿ ಘಾಯ ತಾಗಿದ
ಹಂದಿಯೋ ರಾಧೇಯನರಸನ
ಮುಂದುಗೆಡಿಸದೆ ಮಾಣನೋ ತೆಗೆ ನೂಕು ನೂಕೆನುತ
ಸಂದಣಿಸಿತತಿರಥರು ರಾಯನ
ಮುಂದೆ ತಲೆವರಿಗೆಯಲಿ ಸೇನಾ
ವೃಂದ ತುಡುಕಿತು ಕುಪಿತ ಕಾಳೋರಗನ ನಾಲಗೆಯ ೩೨

ರಾಯನಳಲಿಗರಿವರಘಾಟದ
ನಾಯಕರು ಕಾಣಿರೆ ಸಮೀರನ
ಲಾಯದಲಿ ಲಂಬಿಸಿದವಕಟ ತುಷಾರ ವಾಜಿಗಳು
ಆಯಿತದು ತಪ್ಪೇನೆನುತ ಕ
ರ್ಣಾಯತಾಸ್ತ್ರದಿ ಹರೆಗಡಿದು ರಿಪು
ರಾಯನಲ್ಲಿಗೆ ರಥವ ಬಿಟ್ಟನು ಸೂಠಿಯಲಿ ಕರ್ಣ ೩೩

ಹೊಟ್ಟ ನೂಕಿ ವೃಥಾಹವದ ಜಗ
ಜಟ್ಟಿ ನೀ ಹೊರಕಾಲುಗೊಂಡರೆ
ಬಿಟ್ಟನೇ ತಾ ಕರ್ಣನರಿಯಾ ಕಾಯ್ದುಕೊಳ್ಳೆನುತ
ಕಟ್ಟಳವಿಯಲಿ ವೈರಿ ರಾಯನ
ನಿಟ್ಟಳಿಸಿ ಮುರಿಯೆಸುತ ಬರಲಡ
ಗಟ್ಟಿ ತಡೆದರು ಮತ್ತೆ ಸಕಲ ಮಹಾರಥರು ಭಟನ ೩೪

ನಿಲ್ಲು ಸೈರಿಸು ಸೂತಸುತ ಜವ
ನಲ್ಲಿ ಮೇಳವೆ ಜೀವರಿಗೆ ಭೂ
ವಲ್ಲಭನ ಸಮಜೋಳಿಯೇ ನೀ ಸಾರು ಸಾರೆನುತ
ಚೆಲ್ಲಿದರು ಕೂರಂಬುಗಳನೆಡ
ದಲ್ಲಿ ಬಲದಲಿ ಹಿಂದೆ ಮುಂದೆಸೆ
ಝಲ್ಲರಿಯ ಶರಜಾಳ ಝೊಂಪಿಸಿತಬುಜಸಖಸುತನ ೩೫

ತುರಗ ದಳವೊಂದೆಸೆಯಲೌಕಿತು
ಕರಿಘಟೆಗಳೊಂದೆಸೆಯಲತಿರಥ
ರುರವಣೆಯ ಪದಹತಿಯ ಧೂಳಿಯ ಮಬ್ಬಿನುಬ್ಬರದ
ಧರಧುರವದೊಂದೆಸೆ ಪದಾತಿಯ
ಹೊರಳಿಗಳದೊಂದೆಸೆ ವಿಘಾತಿಸಿ
ತರಿ ಭಟನನೇನೆಂಬೆನೈ ಧೃತರಾಷ್ಟ್ರ ಕೇಳೆಂದ ೩೬

ಮುಸುಕುವುದು ಮುಗಿಲೊಮ್ಮೆ ಸೂರ್ಯನ
ಮಸಕಮಿಗಿಲಹುದೊಮ್ಮೆ ಮೇಘ
ಪ್ರಸರಕೊಳಗಹನೊಮ್ಮೆ ರವಿ ತೋರುವನು ಮತ್ತೊಮ್ಮೆ
ಅಸಮಸಮರದೊಳೀತನಾ ಪರಿ
ಮುಸುಳುವನು ತೋರುವನು ತೊಡೆವನು
ದೆಸೆಗೆಡಿಸುವನು ಬಳಿಕ ಮುಳಿಸಿನೊಳಾ ಮಹಾರಥರ ೩೭

ಬಿದ್ದುದೈನೂರಾನೆ ರುಧಿರದೊ
ಳದ್ದರಿನ್ನೂರರಸು ಮಕ್ಕಳು
ಕದ್ದನಂತಕನಾರು ಸಾವಿರ ಕುದುರೆಯುಸುರುಗಳ
ಬಿದ್ದವರನೊಡೆನತುಳಿದು ಮೇಲು
ಬ್ಬೆದ್ದು ಕವಿಕವಿದಾಳುಕುದುರೆಯ
ಬಿದ್ದಿನಲಿ ಬೇಸರಿಸಿದನು ಪಿತೃಪತಿಯ ಪರಿಜನವ ೩೮

ಆಳ ನೋಯಿಸಿ ನೋಡುತಿಹ ಹೀ
ಹಾಳಿ ತಾನೇಕಕಟಕಟ ದೊರೆ
ಯಾಳ ಧೀವಶವೆನುತ ಸಹದೇವಾದಿಗಳು ಜರೆದು
ತೋಳು ಬಳಲದೆ ತೆಗೆದೆಸುತ ಸಮು
ಜೋಳಿಯಲಿ ನೂಕಿದರು ಕರ್ಣನ
ಮೇಲೆ ಸಾತ್ಯಕಿ ಭೀಮರವನೀಪಾಲನಿದಿರಿನಲಿ ೩೯

ಪೂತು ಮಝುರೇ ಭೀಮ ಸಾತ್ಯಕಿ
ಯಾತರೋ ತಮ್ಮೊಡೆಯನಿದಿರಲಿ
ಘಾತಕರ ಘಟ್ಟಿಸುವೆನೀಗಳೆ ಶಲ್ಯ ನೋಡೆನುತ
ಭೂತನಾಥನ ಭಾಳನಯನೋ
ದ್ಭೂತಧೂಮಧ್ವಜ ಶಿಖಾ ಸಂ
ಘಾತವಿವೆಯೆನೆ ಕೆದರಿದನು ಮಾರ್ಗಣ ಮಹೋದಧಿಯ ೪೦

ಪವನಸುತ ಮುಖದಿರುಹಿದನು ಯಾ
ದವನ ಕಂಡವರಾರು ಸೇನಾ
ನಿವಹಗಿವಹದ ಪಾಡೆ ಕರ್ಣನ ಬಾತಿ ಬೊಪ್ಪರಿಸೆ
ಬವರ ಮುರಿದುದು ವಿಜಯಲಕ್ಷ್ಮಿಯು
ಸವತಿ ಸೇರಿತು ಸುಭಟರಿಗೆ ಬಳಿ
ಕವನಿಪತಿಯೇ ತರುಬಿ ನಿಂದನು ಭಾನುನಂದನನ ೪೧

ಅಂಜುವೆವು ನಿಮಗರಸರೇ ಬಲ
ಪಂಜರದ ಗಿಣಿ ನೀವು ನಿಮಗೀ
ಮಂಜರನ ಪಡಿಮುಖಕೆ ನಿಲುವುದು ನೀತಿಯೇ ನಿಮಗೆ
ಭಂಜನೆಗೆ ಬಲುಹುಳ್ಳಡೆಯು ನಿಮ
ಗಂಜುವರು ಗುರು ಭೀಷ್ಮರಾ ಪರಿ
ರಂಜಕರು ತಾವಲ್ಲೆನುತ ತಾಗಿದನು ಭೂಪತಿಯ ೪೨

ಕಲಿತನವೆ ಹೃದಯದಲಿ ಕಾರ್ಯದ
ಬಳಕೆ ಕೈಯಲಿ ನಡುವೆ ನಾಲಗೆ
ಯುಲಿದಡೇನಗ್ಗಳಿಕೆಯಹುದೋ ವೀರ ಸಿರಿಯಹುದೊ
ಕಲಿತನದ ಕೆಚ್ಚುಳ್ಳಡೆಸುಗೆಯು
ಸುಳಿವ ತೋರಾದರೆಯೆನುತ ನೃಪ
ತಿಲಕ ಬತ್ತಳಿಕೆಯಲಿ ಸೆಳೆದನು ಹೂಡಿದನು ಶರವ ೪೩

ರೂಪಿದೊಳ್ಳಿತು ರೇಖೆಯುಚಿತ ಕ
ಳಾಪವತಿ ಹಸನಾಯ್ತು ಬಾಣ
ಸ್ಥಾಪನಕೆ ಮೆಚ್ಚಿದೆನು ಮೇಲಣ ತೂಕದಾಳವನು
ಈ ಪರಿಯಲೆಂದರಿಯೆನಹುದೈ
ಚಾಪವಿದ್ಯಾಪಾತ್ರವಿಂದವ
ನೀಪತಿಯಲಾ ಪೂತು ಮಝು ಎಂದೆಚ್ಚನಾ ಕರ್ಣ ೪೪

ಗಂಡು ಗರ್ವವನೆಮ್ಮೊಡನೆ ಕೋ
ದಂಡದಲಿ ಮೆರೆ ಸಾಕು ನಿನ್ನಯ
ಭಂಡವಿದ್ಯವ ಮೆರೆವಡದಲಾ ಕೌರವಾಸ್ಥಾನ
ದಿಂಡುದರಿವೆನು ಸೈರಿಸೆನುತವ
ಖಂಡಶರನಿಕರದಲಿ ರಿಪುಮಾ
ರ್ತಂಡತನಯುನನೆಚ್ಚು ಬೊಬ್ಬಿರಿದನು ಮಹೀಪಾಲ ೪೫

ಇರಿತ ಮುನ್ನವೊ ಸುಭಟರಿಗೆ ಬೊ
ಬ್ಬಿರಿತ ಮುನ್ನವೊ ನಿಮ್ಮ ನುಡಿಯಲಿ
ಮುರಿವಡೆದಿರೈ ನೀವೆನುತ ನೃಪನಂಬ ಹರೆಗಡಿದು
ತೆರಹುಗೊಡದೆಚ್ಚನು ನೃಪಾಸ್ತ್ರವ
ತರಿದು ಮಗುಳೆಚ್ಚನು ಶರಾವಳಿ
ಯೆರಗಿದವು ತುರುಗಿದವು ತೆತ್ತಿಸಿದವು ರಥಾಂಗದಲಿ ೪೬

ಕಾಯಲಾಪರೆ ಕರೆದುಕೊಳ್ಳಾ
ವಾಯುಜನನರ್ಜುನನ ನಕುಲನ
ನಾಯಕರೊಳುಬ್ಬಾಳುಗಳನತಿರಥಮಹಾರಥರ
ಸಾಯಲಂಜುವಡಿಳುಹು ಧನುವನು
ನೋಯಿಸೆನು ನುಡಿಸಿದಡೆ ಕೌರವ
ರಾಯನಾಣೆ ನೃಪಾಲ ಕೇಳೆನುತೆಚ್ಚನಾ ಕರ್ಣ ೪೭

ಅರಸನೆಚ್ಚನು ಕರ್ಣ ಶರವನು
ಪರಿಹರಿಸಿ ಮಗುಳೆಚ್ಚನೀತನು
ಧರಣಿಪನನವನೀಶನೆಚ್ಚನು ಹಗೆಯ ರಥ ಹಯವ
ಮರಳಿ ಶಲ್ಯನನೆಚ್ಚಡೀತನ
ಹೊರೆಯುವರನೆಚ್ಚನು ರಥಾಂಗವ
ಹುರುಳುಗೆಡಿಸಿ ಮಹೀಶನೆಚ್ಚನು ಭಾನುನಂದನನ ೪೮

ಅಕಟ ಚಂದ್ರಿಕೆ ಗೆದ್ದುದೋ ಪಾ
ವಕನ ಝಳವೀ ಧರ್ಮಪುತ್ರನ
ವಿಕಳ ಶರದಲಿ ಕರ್ಣ ನೊಂದನಲಾ ಮಹಾದೇವ
ಅಕುಟಿಲರು ನೀವೆಮ್ಮವೊಲು ಬಾ
ಧಕರೆ ಪರರಿಗೆ ಪರಶುಧರ ಸಾ
ಯಕದ ಸವಿ ನೋಡಾದಡೆನುತೆಚ್ಚನು ಮಹೀಪತಿಯ ೪೯

ಏನ ಹೇಳುವೆನವನಿಪತಿ ನಿ
ನ್ನಾನೆಯಗ್ಗಳಿಕೆಯನು ಪಾಂಡವ
ಸೇನೆ ಮಗುಳಡ್ಡವಿಸಿತವನೀಶನ ರಥಾಗ್ರದಲಿ
ಆನೆ ಹೊಕ್ಕವು ಬದ್ಧರದ ಬಲು
ವಾನಿಸದ ಬಂಡಿಗಳನೊಡ್ಡಿದ
ರಾ ನಿರಂತರ ಶರವ ತಡೆದರು ತೆಕ್ಕೆವರಿಗೆಯಲಿ ೫೦

ಕಡಿದು ಬಿಸುಟನು ತೆಕ್ಕೆವರಿಗೆಯ
ಗಡಣವನು ಬದ್ಧರದ ಬಂಡಿಗ
ಳಡಗಿದವು ನಿಜಸೇನೆಸಹಿತರುಣಾಂಬುಪೂರದಲಿ
ಅಡಿಗಡಿಗೆ ಮುಕ್ಕುರಿಕಿ ತನ್ನನು
ತಡೆವ ರಿಪುಚತುರಂಗವಿಪಿನದ
ಕಡಿತ ತೀರಿತು ಮತ್ತೆ ರಾಯನ ಕೆಣಕಿದನು ಕರ್ಣ ೫೧

ಕಾವನಾರೈ ಕರ್ಣ ಮುನಿದರೆ
ಜೀವದಲಿ ಕಕ್ಕುಲಿತೆಯೇಕೆ ಶ
ರಾವಳಿಗಳಿವಲಾ ಕರಾಗ್ರದಲುಗ್ರ ಧನುವಿದಲಾ
ನಾವು ಸೂತನ ಮಕ್ಕಳುಂಗಳೈ
ನೀವಲೇ ಕ್ಷತ್ರಿಯರು ನಿಮಗೆಮ
ಗಾವುದಂತರವತಿಬಳರು ನೀವೆನುತ ತೆಗೆದೆಚ್ಚ ೫೨

ಅರಿಯ ಶರಹತಿಗಡ್ಡವರಿಗೆಯ
ನರಸನಭಿಮುಖಕೊಡ್ಡಿದರು ರಥ
ತುರಗವನು ಚಪ್ಪರಿಸಿ ಸಾರಥಿ ನೂಕಿದನು ರಥವ
ಧರಣಿಪತಿ ಕೇಳೈದು ಶರದಲಿ
ಹರಿಗೆಯನು ಮುರಿಯೆಚ್ಚು ಸೂತನ
ಶಿರವನಿಳುಹಿದಡೊದೆದುಕೊಂಡುದು ಮುಂಡ ಸಾರಥಿಯ ೫೩

ಕೆದರಿದನು ಮಾರ್ಗಣೆಯೊಳರಸನ
ಹೊದಸಿದನು ಹುಸಿಯೇಕೆ ರಾಯನ
ಹುದಿದ ಕವಚವ ಭೇದಿಸಿದವೊಳಬಿದ್ದ ಮುಂಬುಗಳು
ಎದೆಯಲೌಕಿದ ಬಾಣ ಬೆನ್ನಲಿ
ತುದಿಮೊನೆಯ ತೋರಿದವು ಪೂರಾ
ಯದ ವಿಘಾತಿಯಲರಸ ಕಳವಳಿಸಿದನು ಕಂಪಿಸುತ ೫೪

ಅರೆಮುರಳುವಾಲಿಗಳ ಹೆಗಲಲಿ
ಮುರಿದ ಗೋಣಿನ ದುರುದುರಿಪ ನೆ
ತ್ತರನಿಹಾರದ ಮೈಯ ಸಡಲಿದ ಕೈಯ ಬಿಲುಸರಳ
ಅರಸನನು ಕಂಡಳಲಿದರು ಚಾ
ಮರದ ಛತ್ರದ ಹಡಪದವರಾ
ಪ್ತರು ವಿಘಾತಿಯಲಂಬ ಕಿತ್ತರು ಬಹಳ ಶೋಕದಲಿ ೫೫

ಮಂತ್ರಜಲದಲಿ ತೊಳೆದು ಘಾಯವ
ಮಂತ್ರಿಸುತ ಕರ್ಪೂರದ ಕವಳದ
ಯಂತ್ರರಕ್ಷೆಯಲವನಿಪನ ಸಂತೈಸಿ ಮಲಗಿಸುತ
ತಂತ್ರ ತಲ್ಲಣಿಸದಿರಿ ಜಿತಶತ
ತಂತ್ರನೋ ಭೂಪತಿ ವಿರೋಧಿಭ
ಟಾಂತ್ರಭಂಜನನೀಗಳೆಂದುದು ರಾಯನಾಪ್ತಜನ ೫೬

ಸಿಕ್ಕಿದೆಯಲಾ ಸ್ವಾಮಿದ್ರೋಹಿಗ
ಳಿಕ್ಕಿ ಹೋದರೆ ಭೀಮಫಲುಗುಣ
ರೆಕ್ಕತುಳದಲಿ ತೊಡಕಿ ನೀಗಿದಲಾ ನಿಜೋನ್ನತಿಯ
ಚುಕ್ಕಿಗಳು ನಿನ್ನವರ ಮಡುವಿನ
ಲಿಕ್ಕಿ ಕೌರವ ರಾಯನನು ಮರೆ
ವೊಕ್ಕು ಬದುಕಾ ಧರ್ಮಸುತ ಬಾ ಎಂದನಾ ಕರ್ಣ ೫೭

ಸಾಳುವನ ಕೂಡರಗಳಿಗೆ ಸಮ
ಮೇಳವೇ ಶಸ್ತ್ರಜ್ಞನಾದಡೆ
ಸೋಲುವುದೆ ವರ ಶಸ್ತ್ರವಿದ್ಯಾ ಪ್ರೌಢಿಯದು ಬೇರೆ
ಆಳುತನದಭಿಮಾನವದು ಕರ
ವಾಳಧಾರಾಗಮನವರಸರೆ
ಖೂಳರಾದಿರಿ ನೀವೆನುತ ಭಂಗಿಸಿದನಾ ಕರ್ಣ ೫೮

ಶ್ರುತಿರಹಸ್ಯವನರಿವ ಧರ್ಮ
ಸ್ಥಿತಿಗತಿಯನಾರೈವ ಶಾಸ್ತ್ರ
ಪ್ರತತಿಯರ್ಥ ವಿಚಾರವಾಚರಣಾದಿ ಕರ್ಮದಲಿ
ಚತುರರಹ ದರುಶನದ ತರ್ಕದ
ಮತನಿಧಾನವನರಿವ ವರ ಪಂ
ಡಿತರು ನಿಮಗೀ ಕದನಕರ್ಕಶವಿದ್ಯೆಯೇಕೆಂದ ೫೯

ವರ ನದಿಗಳಲಿ ಮುಳುಗಿ ಮೂಗಿನ
ಬೆರಳಲೂರ್ಧ್ವಶ್ವಾಸ ಪವನನ
ಧರಿಸಿ ಕಾಲತ್ರಯಜಪಾನುಷ್ಠಾನಹೋಮದಲಿ
ಪರಮಋಷಿ ಮಧ್ಯದಲಿ ನೀವಾ
ಚರಿಸುವುದು ಬಿಸುಟುಗಿವಡಾಯ್ದದ
ಹೊರಳಿಗಿಡಿಗಳ ಹೊದರೊಳಾಚರಿಸುವರೆ ನೀವೆಂದ ೬೦

ಕೊಲುವಡವ್ವೆಗೆ ಕೊಟ್ಟ ಮಾತಿಂ
ಗಳುಕುವೆನು ನೀ ಹೋಗು ಹರಿಬಕೆ
ಮಲೆವರಾದರೆ ಕಳುಹು ಭೀಮಾರ್ಜುನರನಾಹವಕೆ
ಉಲುಕಿದರೆ ನಿನ್ನಾಣೆಯೆನುತ
ಗ್ಗಳಿಸಿ ನೃಪತಿಯ ಕೆಡೆನುಡಿದು ಪರ
ಬಲವ ಬರಹೇಳೆನುತ ನಿಂದನು ನುಡಿಸಿ ನಿಜಧನುವ ೬೧

ಹನ್ನೆರಡನೆಯ ಸಂಧಿ

ಸೂ. ರಾಯದಳದುಳಕಾರ ಕೌರವ
ರಾಯಸೇನಾಸೂರೆಕಾರನ
ಜೇಯನೋ ಕಲಿಭೀಮ ಗೆಲಿದನು ಭಾನುನಂದನನ

ಏನ ಹೇಳುವೆನರಸ ಪಾಂಡವ
ಸೇನೆಗಾದ ವಿಪತ್ತನರಸನ
ಹಾನಿಯನು ನಿನ್ನವರ ಸುಮ್ಮಾನದ ಸಘಾಡಿಕೆಯ
ಭಾನುಸುತನೋ ಕೌರವನ ಮದ
ದಾನೆಯೋ ಕುರುಸೈನ್ಯ ನಳಿನೀ
ಭಾನಂ ಮಝುಂ ಭಾಪೆಂದು ಹೊಗಳಿತು ಕೂಡೆ ಪರಿವಾರ ೧

ಇವರಯುಹೆರುಷದ ನಗೆನಾ ಬಲ
ದವರ ಮೋರೆಯ ಹೊಗೆಯುನೀ ಬಲ
ದವರ ಭುಜದುರೆವೊಯ್ಲನಾ ಬಲದವರ ಬಿಸುಸುಯ್ಲ
ಇವರೊಸಗೆ ಕೈಗುಡಿಯನಾ ಬಲ
ದವರ ಗೆಲುವಿನೆ ಗಡಿಯ್ಯ ನೀ ಚಿ
ತ್ತವಿಸಿದೈ ಧೃತರಾಷ್ಟ್ರ ಎಂದನು ಸಂಜಯನು ನಗುತ ೨

ಅಳುವವರ ನಗಿಸುವುದು ನಗುವರ
ನಳಿಸುವುದು ಗೆಲಿದವರ ಸೋಲಿಸಿ
ಗೆಲಿಸುವುದು ಸೋತವರನೀ ವಿಪರೀತಗತಿ ವಿಧಿಗೆ
ಅಳಲದಿರು ಸುಮ್ಮಾನದಲಿ ವೆ
ಗ್ಗಳಿಸದಿರು ನಿನ್ನವರು ನಿಮಿಷದೊ
ಳಳಲುದೊರೆಯಲಿ ಮುಗುಳುವಂದವನಿನ್ನು ಕೇಳೆಂದ ೩

ಲಳಿಯ ಲಹರಿಯಲಬ್ಬರದ ಕಳ
ಕಳದ ವಾದ್ಯದ ಲಗ್ಗೆಯಲಿ ಪರ
ಬಲವ ಹೊಕ್ಕನು ಮತ್ತೆ ಮೂದಲಿಸುತ್ತ ಮಹಿಪತಿಯ
ಎಲೆಲೆ ರಾಯನ ರಣಕೆ ಮಾರಿದ
ತಲೆಯ ಕದ್ದಿರೆ ಕುನ್ನಿಗಳಿರೆನು
ತೊಳಗೊಳಗೆ ಬಿಡೆ ಜರೆದು ಜೋಡಿಸಿ ನೂಕಿತರಿಸೇನೆ ೪

ಅಕಟ ರಾಯನ ಹರಿಬದಲಿ ಸೇ
ವಕರಿಗಾದುದು ಸೂರೆ ವೃಂದಾ
ರಕ ವಧೂವರ್ಗದಲಿ ಚಾಳಿಸಬೇಡ ವಿಗ್ರಹಕೆ
ವಿಕಳಬಲನಿವನೇನು ಭಾಳಾಂ
ಬಕನೊ ಬಲಿಬಂಧಕನೊ ಸುರಪಾ
ಲಕನೋ ಫಡಫಡ ಎನುತ ಕವಿದುದು ಕರ್ಣನಿದಿರಿನಲಿ ೫

ಅರಸ ಕೇಳಾಕ್ಷಣಿಕೆ ರುಧಿರದ
ಬಿರುವೊನಲ ಬಲುಗೆಸರ ನೆಣವಸೆ
ಯರಿಲ ನೆಲದಲಿ ಧೂಳಿಯೆದ್ದುದು ದಳದ ಪದಹತಿಗೆ
ಸರಕಟಿಸಿ ರಿಪು ಸರ್ವದಳ ಸಂ
ವರಿಸಿ ನೂಕಿತು ಕಲ್ಪವೇಘದ
ಸರಿವಳಿಗೆ ಸಿಗುರೆದ್ದು ಕೊಬ್ಬಿದ ಕಡಲಿನಂದದಲಿ ೬

ನೊಂದನೇ ಧರ್ಮಜನು ಭಂಗಕೆ
ತಂದನೇ ರಾಧೇಯನಕಟಕ
ಟೆಂದು ಮಡಿದರೆ ಭೀಮಪಾರ್ಥರು ಭೀತಿಯೇಕಿದಕೆ
ನೊಂದನೀ ಪರಿ ತನ್ನ ಕಂಗಳ
ಮುಂದೆ ನರಪತಿ ಪಾರ್ಥನಿನ್ನೇ
ನೆಂದು ಮುನಿವನೊ ಶಿವಶಿವಾ ಎಂದಳಲಿದನು ಭೀಮ ೭

ಅರಸ ಮುರಿವಡೆದಲ್ಲಿ ದಿಕ್ಕನೆ
ಬೆರಸಿದನೆ ಬವರವನೆನುತ ನ
ಮ್ಮರಸಿ ನಗಳೇ ಭಂಡವೀರನ ಮಾತ ತೆಗೆಯೆನುತ
ಅರಸ ತಾನಿನ್ನಾವ ಪರಿ ಹೇ
ವರಿಸುವನೊ ತಾ ಮುನ್ನ ಕರ್ಣನ
ಶರಹತಿಯಲೇಕಳಿದುದಿಲ್ಲಾ ಎನುತ ಚಿಂತಿಸಿದ ೮

ನರನ ಖಾತಿಗೆ ದ್ರೌಪದಿಯ ತೊ
ತ್ತಿರುಗಳುಪಹಾಸ್ಯಕ್ಕೆ ನೃಪತಿಯ
ಮರಣ ಸಾದೃಶ್ಯ ಪ್ರಹಾರವ್ಯಥೆಯ ಕಾಣಿಕೆಗೆ
ಅರರೆ ಭಾಜನವಾದೆನೈ ಹರ
ಹರ ಮಹಾದೇವಾ ಎನುತ ತುದಿ
ವೆರಳಲಾಲಿಯ ನೀರ ಮಿಡಿದಳಲಿದನು ಕಲಿಭೀಮ ೯

ಅರಸ ಕೇಳೈ ಶೋಕರಸಸಾ
ಗರದೊಳದ್ದುದೊ ವಡಬನೆನೆ ಕ
ಣ್ಣರಳಿದವು ಕುಡಿಮೀಸೆ ಕುಣಿದವು ಸುಯ್ಲ ಹೊಗೆ ಮಸಗೆ
ಕರ ನಡುಗೆ ಮೈ ಬಲಿಯೆ ಹುಬ್ಬುಗ
ಳುರೆ ಬಿಗಿಯೆ ಕಂಗಳಲಿ ಕೆಂಗಿಡಿ
ಸುರಿಯೆ ವೀರಾವೇಶದಲಿ ಮಸಗಿದನು ಕಲಿಭೀಮ ೧೦

ಧರಣಿಪನ ಸಂರಕ್ಷೆಗೈಸಾ
ವಿರ ರಥವನಿಪ್ಪತ್ತು ಸಾವಿರ
ತುರಗವನು ಹದಿನಾರು ಸಾವಿರ ಮತ್ತಗಜಘಟೆಯ
ದೊರೆಗಳನು ಸಹದೇವ ಸಾತ್ಯಕಿ
ವರನಕುಳ ಸುತಸೋಮ ಪಾಂಚಾ
ಲರ ಕುಮಾರಾನೀಕವನು ಕರೆಕರೆದು ನೇಮಿಸಿದ ೧೧

ವೈರಿ ಕರ್ಣನ ಕಾಂತೆಯರ ದೃಗು
ವಾರಿ ಧಾರೆಯಲೆನ್ನ ಭಾರಿಯ
ಭೂರಿ ಕೋಪಾನಳನ ಉಳಿಯನು ತಗ್ಗಿಸುವೆನೆನುತ
ಧಾರುಣೀಪತಿಗೆರಗಿ ನಿಜ ಪರಿ
ವಾರವನು ಸುಯ್ದಾನವರಸೆನು
ತಾರುಭಟೆಯಲಿ ಭೀಮ ಮೊಳಗಿದನಹಿತ ಮೋಹರಕೆ ೧೨

ಬೀಳ ಹೊಯ್ ಹೊಯ್ ಬಿಡೆಯದಲಿ ಹೊ
ಕ್ಕಾಳುತೆಗೆಯಲಿ ಧರ್ಮಪುತ್ರನ
ಮೇಲುನೋಟದಲಿರಲಿ ನೋಡಲಿ ನಮ್ಮ ನಾಟಕವ
ಆಳ ನಿಲಿಸೋ ನಿಲಿಸೆನುತ ಸಂ
ಸ್ಫಾಳಿತೋದ್ಧತ ಚಪಳ ಚಾಪ ಕ
ರಾಳ ಮೌರ್ವೀನಾದ ಭೀಷಣನಾದನಾ ಭೀಮ ೧೩

ಪವನಸುತನಿಂಗಿತವ ಮನದಂ
ಘವಣೆಯನು ಮಾದ್ರೇಶ ಕಂಡನು
ರವಿಸುತನ ನೋಡಿದನು ಮುಖದಲಿ ಮುರಿದು ತೋರಿದನು
ಇವನ ಬಲ್ಲೈ ಭೀಮನೋ ಭೈ
ರವನೋ ಭರ್ಗನೊ ಮನುಜ ಕಂಠೀ
ರವನೊ ಕಾಲಾಂತಕನೊ ಕೋಳಾಹಳವಿದೇನೆಂದ ೧೪

ಉರಿಯ ಚೂಣಿಯಲುಸುರ ಹೊಗೆಯು
ಬ್ಬರಿಸುತದೆ ಕೆಂಪೇರಿದಕ್ಷಿಯ
ಲೆರಡು ಕೋಡಿಯಲೊಗುತಲದೆ ಕಿಡಿಗಳ ತುಷಾರಚಯ
ಸ್ಫುರದಹಂಕಾರ ಪ್ರತಾಪ
ಜ್ವರದಿ ಮೈ ಕಾಹೇರುತದೆ ನಿ
ಬ್ಬರದ ಬರವಿಂದೀತನದು ಕಲಿಕರ್ಣ ನೋಡೆಂದ ೧೫

ಕಾಯಲಳವೇ ಕರ್ಣ ಬರಿಯ ನ
ವಾಯಿಯಲಿ ಫಲವಿಲ್ಲ ದೇಹದ
ಬೀಯಕಿದು ಹೊತ್ತಲ್ಲ ಸಾಧಕವಿದಕೆ ಬೇರುಂಟು
ಸಾಯಲಡಸಿದ ಬಡತನಕ್ಕೆ ಪ
ಲಾಯನವೆ ನಿಕ್ಷೇಪವಿದೆ ಬಯ
ಲಾಯಸವು ನಮಗೇತಕೆಂದನು ಮಾದ್ರಪತಿ ನಗುತ ೧೬

ನೀ ಮರುಳಲಾ ಶಲ್ಯ ಘಡ ಸು
ತ್ರಾಮನೇ ಸಮವರ್ತಿಯೇ ಜಿತ
ಕಾಮನೇ ಬಡ ಭೀಮನುರುಬೆಗೆ ಖೇಡನಾದೆಯಲ
ತಾಮಸನ ತಡೆಗಡಿದು ಭೂತ
ಸ್ತೋಮಕುಣಬಡಿಸುವೆನು ಜಯ ಸಂ
ಗ್ರಾಮ ರುದ್ರನು ಕರ್ಣನಾರೆಂದರಿಯೆ ನೀನೆಂದ ೧೭

ಅಕಟ ಬಲುಗೈಯಹೆ ಕರ್ಣಾ ಸಾ
ಧಕನು ನಾನದಕೆನ್ನೆನಿಂದಿನ
ವಿಕಟ ಕೋಪಾಟೋಪ ಭೀಮನ ದಂಡಿಯದು ಬೇರೆ
ತ್ರಿಕಟುಕದ ಕಜ್ಜಾಯವಿದು ಬಾ
ಲಕರ ಸೊಗಸೇ ಕರ್ಣ ಹೇಳ್ ಕೌ
ತುಕದ ಮಾತೇ ನಿನ್ನ ಮೇಲಾಣೆಂದನಾ ಶಲ್ಯ ೧೮

ನುಡಿನುಡಿಗೆ ಭಂಗಿಸುವೆ ನೀ ನಿ
ನ್ನಡಿಗಡಿಗೆ ತಲೆಯೊತ್ತುವೆನೊ ನಿ
ನ್ನೊಡನೆ ಬಂದರಿಯೊಡನೆ ತಲೆಯೊತ್ತುವೆನೊ ತವಕದಲಿ
ಪಡಿಮುಖದೊಳೌಕುವ ವಿರೋಧಿಯ
ಕಡುಹ ತಗ್ಗಿಸಿ ನಿನ್ನ ಮೆಚ್ಚಿಸಿ
ಕೊಡುವೆನಿನ್ನರೆಗಳಿಗೆ ಸೈರಿಸು ಮಾದ್ರಪತಿಯೆಂದ ೧೯

ಇತ್ತಲೀ ಮಾತಿಂಗೆ ಮುನ್ನ ವಿ
ಯಂತ್ರಳವನಳ್ಳಿರಿವ ಸಿಂಧದ
ಸುತ್ತು ಝಲ್ಲರಿ ಚೌರಿಗಳ ಘಲ್ಲಣೆಯ ಘಂಟೆಗಳ
ಹೊತ್ತ ಕೋಪದ ಹೊಗೆವ ಮುಖದೌ
ಡೊತ್ತುವಧರದ ವೈರಿ ಸೇನೆಯ
ಕಿತ್ತಿ ತೇಗುವ ಮನದ ಮಾರುತಿ ವೊಳಗಿದನು ಮುಂದೆ ೨೦

ಎಲೆಲೆ ಭೀಮನು ಶಿವಶಿವಾ ದಳ
ದುಳಿವ ಹಾಯ್ದನೊ ದಿಟ್ಟರಾವೆಡೆ
ನಿಲಿಸಲಾಪವರಿಲ್ಲಲಾ ಕುರುರಾಯನಾನೆಗಳು
ಕಳಕಳದ ಕಾಲಾಟ ರಾಯನ
ದಳಕೆ ದುರ್ಲಭವೆನುತ ಮಿಗೆ ಮುಂ
ಕೊಳಿಸಿ ಭೀಮನ ತುಡುಕಿದರು ರವಿಸುತನ ಪರಿವಾರ ೨೧

ಕವಿದವಾನೆಗಳಟ್ಟಿ ರಾವುತರು
ತಿವಿದರಂಬಿನ ಸರಿಯ ಸಾರದೊ
ಳವಘಟಿಸಿದರು ರಥಿಕರುರವಣಿಸಿದರು ಸಬಳಿಗರು
ಸವಗ ಖಂಡಿಸಲೊದಗಿದರು ಬಿ
ಲ್ಲವರು ಕಟ್ಟಿರಿಕಾರರಾತನ
ಜವಗೆಡಿಸಿದರು ಕಡಲುವಡಬನ ತಡೆದು ನಿಲುವಂತೆ ೨೨

ನುಸಿಗಳಳವಿಯ ಥಟ್ಟಣೆಯ ತೋ
ರಿಸಿದರೋ ಬಲುಹಾಯ್ತು ರಾಯನ
ಘಸಣಿಗಕಟ ವಿಶೋಕ ನೋಡೈ ಪೂತು ವಿಧಿಯೆನುತ
ಮುಸಗಿ ಮೊಗೆದನು ಹೊಗುವ ಸೇನಾ
ಪ್ರಸರವನು ಕುಡಿತೆಯಲಿ ಚೆಲ್ಲಿದ
ನಸಮಬಲನಡಹಾಯ್ಸಿ ಕೊಂಡನು ನೆಲನನಳವಿಯಲಿ ೨೩

ಎಲವೊ ಸೂತನ ಮಗನೆ ರಾಯನ
ನಳಲಿಸಿದೆಲಾ ನಿನ್ನ ರಕುತವ
ತುಳುಕುವೆನು ಹಿಂದಿಕ್ಕಿಕೊಂಬನ ತೋರು ತೋರೆನುತ
ಬಲುಸರಿಯ ನಾರಾಚದಲಿ ಕ
ತ್ತಲಿಸೆ ದೆಸೆ ಕೈಮಾಡಿದನು ಕೈ
ಚಳಕದೆಸುಗೆಯ ಕೇಣದಳತೆಯನರಿಯೆ ನಾನೆಂದ ೨೪

ಏನ ಹೇಳುವೆನಿತ್ತಲೀ ರವಿ
ಸೂನುವೇ ದುರ್ಬಲನೆ ಭೀಮನ
ನೂನ ಶರಸಂಘಾತವನು ಖಂಡಿಸಿದನಾಕ್ಷಣಕೆ
ದೀನನೇ ಶರನಿಕರದಲಿ ಪವ
ಮಾನಜನೊ ಪಾತಾಳಿಯೋ ಕಲಿ
ವೈನತೇಯನೋ ಕರ್ಣನೋ ನಾವರಿಯೆವಿದನೆಂದ ೨೫

ಅರಸ ಕೇಳಾಶ್ಚರಿಯವನು ಟೆ
ಬ್ಬರಿಸುವನೆ ಕಲಿಭೀಮನುಬ್ಬಟೆ
ಯರಿಗಳಾಹವ ಧೀರರಾದರೆ ಧಾತುಗೆಡುವವನೆ
ಶರ ಧನುವ ಹಾಯ್ಕಿದನು ಧೊಪ್ಪನೆ
ಧರೆಗೆ ಧುಮ್ಮಿಕ್ಕಿದನು ಖಡುಗವ
ತಿರುಹಿ ಬೆರಸಿದನಳವಿಯಲಿ ಕುರುಸೇನೆ ಕಳವಳಿಸೆ ೨೬

ಹೊಡೆದು ತಲೆಯನು ಹಗೆಯ ರಕುತವ
ಕುಡಿವೆನಲ್ಲದೊಡವನಿಪಾಲನ
ಕೆಡೆನುಡಿದ ನಾಲಗೆಯ ಕೀಳುವೆನೆನುತ ಕೋಪದಲಿ
ಸಿಡಿವ ಕಿಡಿಗಳ ಕೋಪಶಿಖಿಯು
ಗ್ಗಡದ ಮಾರುತಿ ಹೊಯ್ದು ಕರ್ಣನ
ಕೆಡಹಿದನು ಮುರಿಯೊದೆದನೆದೆಯನು ಹಾಯ್ದು ಮುಂದಲೆಗೆ ೨೭

ಬಾಯ ಬಿಟ್ಟುದು ಸೇನೆ ಕೌರವ
ರಾಯನಾವೆಡೆ ದಳಕೆ ಬಲುಗೈ
ನಾಯಕರು ಕೃಪ ಗುರುಸುತರು ಕೈಗೊಟ್ಟರೇ ಹಗೆಗೆ
ವಾಯುಜನ ಕೈದೊಳಸಿನಲಿ ಕುರು
ರಾಯ ರಾಜ್ಯಶ್ರೀಯ ಮುಂದಲೆ
ಹೋಯಿತೋ ಹಾ ಎನುತ ಮರುಗಿತು ಕೂಡೆ ಕುರುಸೇನೆ ೨೮

ಥಟ್ಟುಗೆಡಹಿದ ಕರ್ಣನನು ಕೈ
ಮುಟ್ಟದಿರು ಹೆರಸಾರು ಪಾರ್ಥನು
ಕೊಟ್ಟ ಭಾಷೆಯ ಮರೆದೆಲಾ ಕೈತಪ್ಪ ಮಾಡದಿರು
ಬಿಟ್ಟು ಹಿಂಗೆಲೆ ಭೀಮ ಭೀತಿಯ
ಬಿಟ್ಟು ಬೆರಸಿದೆ ಸಾಕು ಹರಿಬಕೆ
ಮುಟ್ಟಿಸಿದ ಗೆಲವಾಯ್ತು ಮರಳಿನ್ನೆಂದನಾ ಶಲ್ಯ ೨೯

ದುರುಳತನದಿಂದಣ್ಣ ದೇವನ
ಹುರುಳುಗೆಡೆ ನುಡಿದನು ವಿರೋಧಿಯ
ಶರಹತಿಗೆ ಬೆಂಡಾಗನಿವನ ದುರುಕ್ತಿ ಶರಹತಿಗೆ
ಅರಸ ಬಳಲಿದನೇನ ಮಾಡುವೆ
ದುರುಳ ನುಡಿದನ ನಾಲಗೆಯ ನಿಡು
ಸೆರೆಯ ಬಿಡಿಸುವೆ ಮಾವ ಸೈರಿಸಿಯೆಂದನಾ ಭೀಮ ೩೦

ಸಾಕು ಹೆರತೆಗೆ ಘಾಯವಡೆದವಿ
ವೇಕಿ ಮೈ ಮರೆದಿದ್ದ ಹೊತ್ತಿದು
ನೀ ಕುಠಾರನಲಾ ಕಿರೀಟಿಯ ಭಾಷಿತದ್ರುಮಕೆ
ಲೋಕಮಾನ್ಯನು ಕರ್ಣ ಕುರುಬಲ
ದಾಕೆವಾಳನು ಭಂಗವಡೆದುದೆ
ಸಾಕು ನೀ ಸಾರೆಂದು ಭೀಮನ ನೂಕಿದನು ಶಲ್ಯ ೩೧

ರಥಕೆ ಮರಳಿದನಾತನೀತನ
ವ್ಯಥೆಯನೇನೆಂಬೆನು ಸುಯೋಧನ
ರಥಿಗಳುಬ್ಬಟೆ ಗರ್ಭವಿಕ್ಕಿತು ನಿಮಿಷಮಾತ್ರದಲಿ
ರಥದೊಳಗೆ ಮಾದ್ರೇಶನೀ ಸಮ
ರಥನ ಸಂತೈಸಿದನು ಕವಳ
ಪ್ರಥಿತ ಮಂತ್ರೌಷಧಿಗಳಲಿ ಹದುಳಿಸಿದನಾ ಕರ್ಣ ೩೨

ಆರಿತದು ಬೊಬ್ಬೆಯಲಿ ದುಗುಡದ
ಭಾರದಲಿ ತಲೆಗುತ್ತಿತಿವರು
ಬ್ಬಾರದಲಿ ಭುಲ್ಲವಿಸಿತವರು ವಿಘಾತಿಯಿಂದಿವರು
ಪೂರವಿಸಿದುದು ಪುಳಕದಲಿ ದೃಗು
ವಾರಿ ಪೂರದಲಿವರಖಿಳ ಪರಿ
ವಾರವಿದ್ದುದು ಕೇಳು ಜನಮೇಜಯ ಮಹೀಪಾಲ ೩೩

ಹದಿಮೂರನೆಯ ಸಂಧಿ

ಸೂ. ಮಡಿದರಾಹವದೊಳಗೆ ಕೌರವ
ನೊಡನೆ ಹುಟ್ಟಿದರನಿಲಸುತನಿಂ
ದಡಿಗಡಿಗೆ ಹಳಚಿದನು ಯಮನಂದನನಾ ಕರ್ಣ

ಕೇಳು ಧೃತರಾಷ್ಟ್ರಾವನಿಪ ನಿ
ನ್ನಾಳನಗ್ಗಳಿಕೆಯ ವಿಘಾತಿಯ
ಗಾಳಿ ತಾಗಿತು ತಿರುಗಿದುದು ಬಳಿಕೀ ಸಮಸ್ತಬಲ
ಕೋಲು ತಪ್ಪಿದ ಫಣಿಯವೊಲು ಲಯ
ಕಾಲಕೊದರುವ ಸಿಡಿಲವೊಲು ಹೀ
ಹಾಳಿಸುತ ತಮತಮಗೆ ಬಯ್ದುದು ಕೂಡೆ ಪರಿವಾರ ೧

ರಣದೊಳೊಪ್ಪಿಸಿಕೊಟ್ಟು ಕರ್ಣನ
ಹಣವ ಹೊಳ್ಳಿಸಿ ಮರೆದೆವೇ ಮ
ನ್ನಣೆಯ ಮೋಹವ ತೊರೆದೆವೇ ಕರ್ಪುರದ ವೀಳೆಯವ
ಗುಣ ಪಸಾಯದ ಕಾಣಿಕೆಯ ಹರಿ
ಯಣದ ಹಂತಿಯ ದಾಯದೂಟಕೆ
ಋಣಿಗಳಾದೆವೆ ಶಿವಶಿವಾ ಎಂದೊಳರಿತಖಿಳಬಲ ೨

ಮೀಸೆಯೇಕಿವ ಸುಡಲಿ ಸುಭಟರ
ವೇಷವೇಕಿವು ತಮ್ಮ ವಧುಗಳು
ಹೇಸಿ ನಮ್ಮನು ಬಿಸುಟು ಹೋಗಳೆ ಚಂಡಿಕಾದೇವಿ
ಭಾಷೆ ಬಾಯಲಿ ಕೈದು ಕೈಯಲಿ
ವಾಸಿಯನು ಬಿಸುಟಕಟ ಜೀವದ
ಲಾಸೆ ಮಾಡಿದೆವೆನುತ ಮರುಗಿತು ಕೂಡೆ ಪರಿವಾರ ೩

ಬಯ್ವ ಹೆಂಡಿರ ಚಿಂತೆಯಿಲ್ಲದೆ
ಹೊಯ್ವ ಕೀರ್ತಿಯ ಹಂಬಲಿಲ್ಲದೆ
ಒಯ್ವ ನರಕದ ನೆನಹದಿಲ್ಲದೆ ಪತಿಯ ಸಮಯದಲಿ
ಕಾಯ್ವರಾವಲ್ಲೆಂದು ಕೆಲದಲಿ
ಬಯ್ವರಿಗೆ ಮೈಗೊಟ್ಟು ಬದುಕುವ
ದೈವದೂರರು ನಾವೆನುತ ಮರುಗಿತ್ತು ಪರಿವಾರ ೪

ನುಡಿಯ ಭಂಡರು ಕೆಲರು ಸಿಂಧದ
ಗುಡಿಯ ಭಂಡರು ಕೆಲರು ಹಾಹೆಯ
ತೊಡರ ಭಂಡರು ಕೆಲರು ಕೆಲರು ಕುಲಕ್ರಮಾಗತದ
ಗಡಬಡೆಯ ಭಂಡರು ವಿಪತ್ತಿನೊ
ಳೊಡೆಯನಿರೆ ಕೈದುಗಳ ಹೊರೆತಲೆ
ಯೊಡನೆ ಬಿಟ್ಟಿಯ ಭಂಡರಾವೆಂದುದು ಭಟವ್ರಾತ ೫

ಮೀಸೆ ಸೀದವು ಭಟರ ಸುಯ್ಲಿನ
ಲಾಸೆ ಬೀತುದು ದೇಹದಲಿ ಬಲು
ವಾಸಿಯಲಿ ಮನ ಮುಳುಗಿತನಿಬರಿಗೇಕಮುಖವಾಗಿ
ಬೀಸಿದರು ಚೌರಿಗಳ ಬಲ ವಾ
ರಾಶಿ ಮಸಗಿತು ರಿಪುಗಳಸುವಿನ
ಮೀಸಲನು ತುಡುಕಿದುದು ಕೌರವ ಮಹಾರಥರ ೬

ಕುದುರೆ ಕುದುರೆಯ ಮುಂಚಿದವು ಕರಿ
ಮದಕರಿಯ ಹಿಂದಿಕ್ಕಿದವು ನೂ
ಕಿದವು ರಥ ರಥದಿಂದ ಮುನ್ನ ಮಹಾರಥಾದಿಗಳು
ಇದಿರೊಳೊಬ್ಬನನೊಬ್ಬನೊದಗುವ
ಕದನ ಭರದ ಪದಾತಿ ಪೂರಾ
ಯದಲಿ ಕವಿದುದು ಜಡಿವ ಬಹುವಿಧವಾದ್ಯ ರಭಸದಲಿ ೭

ಪೂತು ಮಝು ದಳಪತಿಯ ಹರಿಬವ
ನಾತುದೇ ಕುರುಸೇನೆ ಸುಭಟ
ವ್ರಾತವಳವಿಗೆ ಬರಲಿ ಬರಲಿ ವಿಶೋಕ ನೋಡೆನುತ
ಹೂತ ಸಂಪಗೆ ವನವನಳಿ ಸಂ
ಘಾತ ಮುತ್ತಿದಡೇನೆನುತ ನಿ
ರ್ಭೀತನಿದ್ದನು ಭೀಮ ಸುಮ್ಮಾನದ ಸಘಾಡದಲಿ ೮

ಕವಿದುದಿದು ಗರಿಗಟ್ಟಿ ಕೌರವ
ನಿವಹ ಮೋಡಾಮೋಡಿಯಲಿ ರಣ
ದವಕಿ ಕರ್ಣದ್ರೋಹಿಯಾವೆಡೆ ತೋರು ತೋರೆನುತ
ತಿವಿವ ಬಲ್ಲೆಹದಿಡುವ ಚಕ್ರದ
ಕವಿವ ಬಾಣದ ಹೊಯ್ವ ಖಡ್ಗದ
ವಿವಿಧಬಲ ಬಿಡದೌಕಿ ಮುತ್ತಿತು ಪವನನಂದನನ ೯

ಸಿಕ್ಕಿದನು ರಿಪು ಸ್ವಾಮಿದ್ರೋಹನು
ಚುಕ್ಕಿಯೋ ತಡೆ ಹೋಗಬಿಡದಿರಿ
ಹೊಕ್ಕುಳಲಿ ಮಗುವುಂಟೆ ಹಣೆಯಲಿ ನೋಟವೇ ಹಗೆಗೆ
ಹೊಕ್ಕು ಹೊಯ್ ಹೊಯ್ ನೆತ್ತರೊಬ್ಬರಿ
ಗೊಕ್ಕುಡಿತೆಯೇ ಸಾಕೆನುತ ಬಲ
ಮುಕ್ಕುರುಕಿತನಿಲಜನ ಕಾಣೆನು ನಿಮಿಷಮಾತ್ರದಲಿ ೧೦

ಹರಿಬದೋಲೆಯಕಾರರೋ ಮು
ಕ್ಕುರುಕಿದರೊ ಪವನಜನು ಸಿಕ್ಕಿದ
ದೊರೆಯ ಬಿಡಿಸೋ ನೂಕೆನುತ ಪಾಂಚಾಲ ಕೈಕೆಯರು
ವರನಕುಳ ಸಹದೇವ ಸಾತ್ಯಕಿ
ತುರುಕ ಬರ್ಬರ ಭೋಟ ಮಾಗಧ
ಮರು ಪುಳಿಂದಾದಿಗಳು ಕವಿದುದು ನೃಪನ ಸನ್ನೆಯಲಿ ೧೧

ಸರಕಟಿಸಿ ರಿಪುರಾಯ ದಳ ಸಂ
ವರಿಸಿಕೊಂಡುದು ಸಿಕ್ಕಿದಹಿತನ
ಸೆರೆಯ ಬಿಡದಿರಿ ಬಿಡದಿರಂಜದಿರಂಜದಿರಿ ಎನುತ
ಗುರುಜ ಕೃಪ ಕೃತವರ್ಮ ಯವನೇ
ಶ್ವರ ಕಳಿಂಗ ಕರೂಷ ಕೌರವ
ರರಸ ಮೊದಲಾದಖಿಳ ಬಲ ಜೋಡಿಸಿತು ಝಡಿತೆಯಲಿ ೧೨

ಏನ ಹೇಳುವೆನರಸ ಕರ್ಣನ
ಹಾನಿ ಹರಿಬದ ಬವರವನು ಪವ
ಮಾನನಂದನ ನಿಮಿಷದಲಿ ಮುಸುಕಿದನು ಬಾಣದಲಿ
ದಾನವರ ಥಟ್ಟಣೆಯ ಕೀಲಣ
ದಾ ನಗರಿಯನು ನೆಗ್ಗಿದಂತಿರ
ಲೀ ನಿಘಾತದ ಸೇನೆ ಮುರಿದುದು ಭಟನ ಭಾರಣೆಗೆ ೧೩

ಸಿಲುಕುವುವು ಮೃಗಪಕ್ಷಿ ಹೂಡಿದ
ಬಲೆಗಳಲಿ ಕಾಡಾನೆ ಬೀಸಿದ
ಬಲೆಯ ಕೊಂಬುದೆ ನಿನ್ನ ದಳ ಥಟ್ಟೈಸಿ ಮುತ್ತಿದರೆ
ಅಳುಕುವನೆ ಕಲಿ ಭೀಮನೆಡದಲಿ
ಕಲಕಿದನು ಬಲವಂಕದಲಿ ಕೈ
ವಳಿಸಿ ಕೊಂದನು ವರ ಪುರೋಭಾಗವ ವಿಭಾಡಿಸಿದ ೧೪

ಆಳ ವೇಳೆಯ ಮುರಿದುದೀ ಸಾ
ಯಾಳು ಸತ್ತುದು ಹಲವು ಪಡಿಬಲ
ದಾಳು ಕೂಡದ ಮುನ್ನ ಕೊಂದನು ಕೋಟಿ ಸಂಖ್ಯೆಗಳ
ಮೇಲೆ ಮೇಲೊಡಗವಿವ ಸಮರಥ
ಜಾಲವನು ಮುರಿಯೆಚ್ಚು ನಿಮಿಷಕೆ
ಧೂಳಿಪಟ ಮಾಡಿದನು ಕರ್ಣನ ಮನ್ನಣೆಯ ಭಟರ ೧೫

ಮತ್ತೆ ಕವಿದುದು ಮೇಲೆ ಪಡಿಬಲ
ವೊತ್ತಿ ಹೊಕ್ಕುದು ಹೆಣದ ಬೆಟ್ಟವ
ಹತ್ತಿ ಹುಡಿಹುಡಿ ಮಾಡಿ ಹಿಡಿದರು ರಥದ ಕುದುರೆಗಳ
ಕುತ್ತಿದರು ಸಾರಥಿಯನಾತನ
ತೆತ್ತಿಸಿದರಿಟ್ಟಿಯಲಿ ಭೀಮನ
ಮುತ್ತಿ ಕೈಮಾಡಿದರು ರವಿಸುತ ಸಾಕಿದತಿಬಳರು ೧೬

ಇಳಿದು ರಥವನು ಗದೆಯ ಕೊಂಡ
ಪ್ಪಳಿಸಿದನು ಹೊರಕೈಯಲರೆದಿ
ಟ್ಟಳಿಸಿದರನೆಡಗಾಲಲೊದೆದನು ಹೊಯ್ದು ಮುಡುಹಿನಲಿ
ಕಲಕಿದನು ಕೌರವ ಮಹಾಬಲ
ಜಲಧಿಯನು ಸರ್ವಾಂಗ ಶೋಣಿತ
ಜಲದಲೆಸೆದನು ನನೆದ ಜಾಜಿನ ಗಿರಿಯವೊಲು ಭೀಮ ೧೭

ಸವರಿದನು ರವಿಸುತನ ಪರಿವಾ
ರವನು ಮಗುಳುಬ್ಬೆದ್ದ ಕೌರವ
ನಿವಹದಲಿ ಕಾದಿದನು ದುರ್ಯೋಧನ ಸಹೋದರರ
ತಿವಿದು ನಾಲ್ವರ ಕೊಂದನುಬ್ಬರಿ
ಸಂವರ ಗರ್ವವ ಮುರಿದು ಪ್ರಳಯದ
ಭವನ ರೌದ್ರದವೋಲು ಭಲ್ಲಯಿಸಿದನು ಕಲಿಭೀಮ ೧೮

ಶಿವ ಶಿವಾ ಕೌರವನ ತಮ್ಮದಿ
ರವಗಡಿಸಿದರು ನಂದೋಪನಂದರು
ಜವಗೆ ಜೇವಣಿಯಾದರೇ ಕಲಿ ಭೀಮನಿದಿರಿನಲಿ
ತಿವಿವರಿನ್ನಾರೆನುತ ಗುರುಸಂ
ಭವ ಕೃಪಾದಿಗಳೊತ್ತಿ ನಡೆತಹ
ರವವ ಕೇಳಿದು ಕುದಿದನವಮಾನದಲಿ ಕಲಿಕರ್ಣ ೧೯

ಪೂತು ದೈವವೆ ಭೀಮಸೇನನ
ಘಾತಿಯಲಿ ಸೊಪ್ಪಾದೆನೈ ಸಂಡ
ಲೇತಕೀ ಧನುವೇತಕೀ ದಿವ್ಯಾಸ್ತ್ರ ನಿಕರಗಳು
ಜಾತಿ ನಾನೆಂದೆನ್ನನಗ್ಗಿಸಿ
ಭೂತಳಾಧಿಪ ಸಾಕಿದನು ತಾ
ನೇತರಿಂದುಪಕಾರಿ ಎಂದನು ಸುಯ್ದು ಕಲಿಕರ್ಣ ೨೦

ಎಲೆ ಮರುಳೆ ರಾಧೇಯ ಫಡ ಮನ
ವಿಳುಹದಿರು ತಪ್ಪೇನು ಸೋಲವು
ಗೆಲವು ದೈವಾಧೀನ ನಿನ್ನಾಳ್ತನಕೆ ಕುಂದೇನು
ಹಲಬರಮರಾಸುರರೊಳಗೆ ಹೆ
ಬ್ಬಲವೆ ದುರ್ಬಲವಾಯ್ತು ನೀ ಮನ
ವಳುಕದಿರು ಹಿಡಿ ಧನುವನನುವಾಗೆಂದನಾ ಶಲ್ಯ ೨೧

ಖಾತಿ ಮೊಳೆತುದು ಮತ್ತೆ ಬಲ ಸಂ
ಘಾತಕಭಯವನಿತ್ತು ಬಾಣ
ವ್ರಾತವನು ಹೊದೆಗೆದರಿ ಹೊಸ ಹೊಗರೆದ್ದನಡಿಗಡಿಗೆ
ಭೂತನಾಥನ ಮರೆಯ ಹೊಗಲಿ ಮ
ಹೀತಳೇಶನ ಹಿಡಿವೆನೆನುತ ವಿ
ಧೂತರಿಪುಬಲ ರಥವ ಬಿಟ್ಟನು ಧರ್ಮಜನ ಹೊರೆಗೆ ೨೨

ಕಾಲಯಮನೋ ಕರ್ಣನೋ ಭೂ
ಪಾಲಕನ ಬೆಂಬತ್ತಿದನು ಪಾಂ
ಚಾಲೆಯೋಲೆಯ ಕಾವರಿಲ್ಲಾ ಎನುತ ಬಲನೊದರೆ
ಕೇಳಿದನು ಕಳವಳವನೀ ರಿಪು
ಜಾಲವನು ಜರೆದಡ್ಡಹಾಯ್ದನು
ಗಾಳಿಗುದಿಸಿದ ವೀರನದ್ಭುತ ಸಿಂಹನಾದದಲಿ ೨೩

ಮತ್ತೆ ಕರ್ಣನ ಭೀಮನಾಹವ
ಹೊತ್ತಿದುದು ಹಿಂದಾದ ಹೆಕ್ಕಳ
ಹತ್ತು ಸಾವಿರ ಹಡೆಯದೇ ಫಡ ನೂಕು ನೂಕೆನುತ
ಮತ್ತೆ ಗಜಘಟೆಯಾರು ಸಾವಿರ
ಮುತ್ತಿದವು ಸೌಬಲನ ಥಟ್ಟಿನೊ
ಳೊತ್ತಿಬಿಟ್ಟವು ನಾಲ್ಕು ಸಾವಿರ ಕುದುರೆ ರಥಸಹಿತ ೨೪

ಸಂದಣಿಸಿ ದಳ ನೂಕಿಕೊಂಡೈ
ತಂದುದಿದು ರವಿಸುತನ ತೊಲಗಿಸಿ
ಮುಂದೆ ಮೋಹರದೆಗೆದು ಮೂದಲಿಸಿತು ಮರುತ್ಸುತನ
ಬಂದುದೇ ಕರ್ಣಂಗೆ ಪಡಿಬಲ
ತಂದುದೇ ನಮಗೊಸಗೆಯನು ಲೇ
ಸೆಂದು ಸುಭಟರ ದೇವ ಸುಮ್ಮಾನದಲಿ ಲಾಗಿಸಿದ ೨೫

ದಳದೊಳಗೆ ದಳವುಳಿಸಿದನು
ಕೆಲಬಲನನೆಚ್ಚನು ಕೇಣವಿಲ್ಲದೆ
ನಿಲುಕಿದರಿಗಳು ಚಿಗಿದರಮರೀಜನದ ತೋಳಿನಲಿ
ತಲೆಗಳೊಟ್ಟಿಲ ತೋಳ ಕಡಿಗಳ
ತಳಿದ ಖಂಡದ ಕುಣಿವ ಮುಂಡದ
ಸುಳಿಯ ರಕುತದ ಕಡಲ ರೌಕುಳವಾಯ್ತು ನಿಮಿಷದಲಿ ೨೬

ಬಿಟ್ಟ ಸೂಠಿಯೊಳೊಗ್ಗು ಮುರಿಯದೆ
ಬಿಟ್ಟ ಕುದುರೆಯ ದಳವ ಕೊಂದನು
ಬಿಟ್ಟವನು ಬಲವೈರಿ ತರಿವವೊಲಿಭದ ಮೋಹರವ
ಥಟ್ಟುಗೆಡಹಿದನುರವಣಿಸಿ ಸಾ
ಲಿಟ್ಟು ರಥವಾಜಿಗಳ ನೆರೆ ಹುಡಿ
ಗುಟ್ಟಿದನು ಕಾಲಾಳ ಘಾಸಿಯನರಿಯೆ ನಾನೆಂದ ೨೭

ಮುರಿಯೆ ಪಡಿಬಲವಾಕೆಯಲಿ ಬಿಡೆ
ಜರೆದು ಬಿಟ್ಟನು ರಥವ ಭೀಮನ
ಬಿರುಬ ಕೊಳ್ಳದೆ ನೂಕಿದನು ಧರ್ಮಜನ ಸಮ್ಮುಖಕೆ
ಇರಿತಕಂಜದಿರಂಜದಿರು ಕೈ
ಮರೆಯುದಿರು ಕಲಿಯಾಗೆನುತ ಬೊ
ಬ್ಬಿರಿದು ಧಾಳಾಧೂಳಿಯಲಿ ತಾಗಿದನು ಕಲಿಕರ್ಣ ೨೮

ಎಚ್ಚನರಸನ ಭುಜವ ಕೆಲ ಸಾ
ರ್ದೆಚ್ಚನಾತನ ಸಾರಥಿಯ ರಥ
ದಚ್ಚನಾತನ ಹಯವನವನೀಪತಿಯ ಟೆಕ್ಕೆಯವ
ಎಚ್ಚು ಮೂದಲಿಸಿದನು ಪುನರಪಿ
ಯೆಚ್ಚು ಭಂಗಿಸಿ ನೃಪನ ಮರ್ಮವ
ಚುಚ್ಚಿ ನುಡಿದನು ಘಾಸಿ ಮಾಡಿದನಾ ನೃಪಾಲಕನ ೨೯

ಚೆಲ್ಲಿತವನೀಪತಿಯ ಮೋಹರ
ವೆಲ್ಲ ನೆರೆ ನುಗ್ಗಾಯ್ತು ರಾಯನ
ಘಲ್ಲಿಸಿದನೇಳೆಂಟು ಬಾಣದಲೀತನಡಿಗಡಿಗೆ
ಅಲ್ಲಿಯದುಭುತ ರಣವನಪ್ರತಿ
ಮಲ್ಲ ಮಾರುತಿ ಕೇಳಿದನು ಮಗು
ಳಲ್ಲಿಯೇ ಮೊಳಗಿದನು ನಿಮಿಷಕೆ ಕರ್ಣನಿದಿರಿನಲಿ ೩೦

ಅಳಲಿಸಿದನೇ ಧರ್ಮಪುತ್ರನ
ಬಳಿಚಿ ಬಿಟ್ಟೆನು ನಾಯ ಕೊಲ್ಲದೆ
ಕಳುಹಿದರೆ ಬೆಂಬಿಡನಲಾ ಮುರುಕೊಳಿಸಿ ಮುರುಕೊಳಿಸಿ
ತಲೆ ಕೊರಳ ಸಂಪ್ರತಿಗೆ ಭೇದವ
ಬಳಸಿದರೆ ಸಾಕೈಸಲೇ ಎನು
ತುಲಿದು ಕಣೆಗಳ ಕೆದರಿ ಕರ್ಣನ ತರುಬಿದನು ಭೀಮ ೩೧

ಭೀಮಸೇನನ ದಳಪತಿಯು ಸಂ
ಗ್ರಾಮ ಮಸೆದುದು ಮತ್ತೆ ಕೈಕೊಳ
ಲೀ ಮಹಾರಥರೆನುತ ಕೈಬೀಸಿದನು ಕುರುರಾಯ
ಸೋಮದತ್ತನ ಸೂನು ಕೃಪನು
ದ್ದಾಮ ಶಕುನಿ ಸುಯೋಧನಾನುಜ
ನಾ ಮಹಾಹವಕೊದಗಿದರು ಕೃತವರ್ಮ ಗುರುಸುತರು ೩೨

ಅಖಿಳ ಬಲಭಾರಣೆಯಲೊಂದೇ
ಮುಖದಲೊಡ್ಡಿತು ಪವನಜನ ಸಂ
ಮುಖದೊಳನಿಬರು ಕೆಣಕಿದರು ಕಲ್ಪಾಂತಭೈರವನ
ಸುಖಿಗಳಕಟಾ ನೀವು ಸಮರೋ
ನ್ಮುಖರಹರೆ ಕರ್ಣಂಗೆ ಸಾವಿನ
ಸಖಿಗಳೇ ಲೇಸೆನುತ ಕೈಕೊಂಡೆಚ್ಚನಾ ಭೀಮ ೩೩

ಗುರುಸುತನನೈವತ್ತು ಬಾಣದ
ಲರಸನನುಜರ ಕೃಪನ ಕೃತವ
ರ್ಮರನು ಮೂನೂರಂಬಿನಲಿ ವೃಷಸೇನ ಸೌಬಲರ
ಸರಳು ಮೂವತ್ತರಲಿ ಪುನರಪಿ
ಗುರುಸುತಾದಿ ಮಹಾರಥರನೆರ
ಡೆರಡರಲಿ ಮುರಿಯೆಚ್ಚು ವಿಮುಖರ ಮಾಡಿದನು ಭೀಮ ೩೪

ಮತ್ತೆ ಜೋಡಿಸಿ ಕೌರವೇಂದ್ರನ
ನೊತ್ತಲಿಕ್ಕಿ ಮಹಾರಥರು ರಿಪು
ಮತ್ತದಂತಿಯ ಕೆಣಕಿದರು ಕೆದರಿದರು ಮಾರ್ಗಣವ
ಎತ್ತಲವನೀಪತಿಯ ಮೋಹರ
ವತ್ತ ಮೆಲ್ಲನೆ ರಥವ ಬಿಟ್ಟನು
ಮತ್ತೆ ಮೂದಲಿಸಿದನು ಯಮಸೂನುವನು ಕಲಿಕರ್ಣ ೩೫

ದ್ರೋಣ ಬರಸಿದ ಭಾಷೆಯೆಂದೇ
ಕ್ಷೋಣಿಪತಿ ಬಗೆಯದಿರು ತನ್ನನು
ವಾಣಿಯದ ವಿವರದಲಿ ಸಲಹನು ಕೌರವರ ರಾಯ
ಪ್ರಾಣದಾಸೆಯ ಮರೆದು ತನ್ನೊಳು
ಕೇಣವಿಲ್ಲದೆ ಕಾದೆನುತ ನಿ
ತ್ರಾಣನನು ನಿಬ್ಬರದ ನುಡಿಗಳಲಿರಿದನಾ ಕರ್ಣ ೩೬

ಬಿಡನು ರಾಯನ ಬೆನ್ನನೀತನ
ಕೆಡಹಿ ರಕುತವ ಕುಡಿಯೆನುತ ಬಲ
ನೆಡನೊಳಿಟ್ಟಣಿಸಿದರು ಸಾತ್ಯಕಿ ನಕುಳ ಸಹದೇವ
ತುಡುಕಿದರು ಪಾಂಚಾಲ ಮತ್ಸ್ಯರ
ಗಡಣ ಕೈಕೆಯ ಪಂಚ ಪಾಂಡವ
ರಡಸಿದರು ಹೊದಿಸಿದರು ಕಣೆಯಲಿ ರವಿಸುತನ ರಥವ ೩೭

ಇನಿಬರೊಂದೇ ಸೂಠಿಯಲಿ ಮುಂ
ಮೊನೆಯ ಬೋಳೆಯ ಸುರಿದರಡಿಗಡಿ
ಗಿನಿಬರಂಬನು ಮುರಿದು ತರಿದನು ಸೂತ ವಾಜಿಗಳ
ತನತನಗೆ ಹೊಸ ರಥದೊಳೊಂದೊ
ಗ್ಗಿನಲಿ ಕವಿದೆಚ್ಚರು ಮಹಾಹವ
ವೆನಗೆ ಬಣ್ಣಿಸಲರಿದು ಧರಣೀಪಾಲ ಕೇಳೆಂದ ೩೮

ಭಟರು ಮುತ್ತಿದರಿನಸುತನ ಲಟ
ಕಟಿಸಲೆಚ್ಚರು ಶಿವಶಿವಾ ನಿ
ಚ್ಚಟದ ನಿಬ್ಬರದಂಘವಣೆ ಮರಳು ಪೂತು ಲೇಸೆನುತ
ನಿಟಿಲನೇತ್ರನ ನಯನಶಿಖಿಯು
ಬ್ಬಟೆಗೆ ಸಮ ಜೋಡಿಸಿತು ಕರ್ಣನ
ಚಟುಳ ವಿಕ್ರಮಪವನ ಪರಿಗತ ಬಾಣಶಿಖಿ ನಿಕರ ೩೯

ನಕುಳನನು ನೋಯಿಸಿದ ಸಹದೇ
ವಕನ ಘಾಯಂಬಡಿಸಿದನು ಸಾ
ತ್ಯಕಿಯ ಮಸೆಗಾಣಿಸಿದನಾ ಪಾಂಚಾಲ ಕೈಕೆಯರ
ವಿಕಳಗೊಳಿಸಿದನಾ ಮಹಾರಥ
ನಿಕರ ಸೈರಿಸಿ ಮತ್ತೆ ಮೇಳಾ
ಪಕದಲಂಘೈಸಿದರು ತಡೆದರು ಭಾನುನಂದನನ ೪೦

ಹೇಳಲರಿಯೆನು ನಿನ್ನವನ ಕ
ಟ್ಟಾಳುತನವನು ದೇವ ದೈತ್ಯರ
ಕಾಳೆಗದಲಿವನಂತೆ ಬಲ್ಲಿದರಿಲ್ಲ ಬಿಲ್ಲಿನಲಿ
ಆಳ ಮುರಿದನು ಹೂಣೆ ಹೊಗುವ
ಬ್ಬಾಳುಗಳ ಬಲು ದೇಹದಂಬಿನ
ಕೀಲಣದ ಕಾಳಾಸದಿರಿತವ ಮೆರೆದನಾ ಕರ್ಣ ೪೧

ಸರಳ ಹತಿಯಲಿ ನಕುಲ ಸಾತ್ಯಕಿ
ಬಿರುದ ಸಹದೇವಾದಿ ವೀರರು
ಪಿರಿದು ನೊಂದರು ಮತ್ತೆ ತರುಬಿದನವನಿಪಾಲಕನ
ಅರಸ ಹಿಡಿಹಿಡಿ ಧನುವನಿನ್ನೆರ
ಡರಸನಾನದು ಧರಣಿಯೊಬ್ಬನ
ಶಿರದ ಬರಹವ ತೊಡೆವೆನಿದೆಯೆಂದೆನುತ ತೆಗೆದೆಚ್ಚ ೪೨

ಅಕಟಕಟ ರಾಧೇಯ ಕೇಳೀ
ನಕುಳನೀ ಸಹದೇವನೀ ಸಾ
ತ್ಯಕಿ ನರೇಶ್ವರರೆನಿಸುವೀ ಕುಂತೀಕುಮಾರಕರು
ಅಕುಟಿಲರು ನಯಕೋವಿದರು ಧಾ
ರ್ಮಿಕರ ಕೊಲಬೇಡಿವರನತಿ ಬಾ
ಧಕರು ಭೀಮಾರ್ಜುನರ ಸಂಹರಿಸೆಂದನಾ ಶಲ್ಯ ೪೩

ಮುಳಿದು ಕಬ್ಬಿನ ತೋಟದಲಿ ನರಿ
ಹುಲಿಯುವೋಲ್ ಗರ್ಜಿಸಿತು ಗಡ ಹೆ
ಕ್ಕಳದ ಹೇರಾಳದಲಿ ಹೆಣಗಿದೆ ಬಾಲವೃದ್ಧರಲಿ
ಬಲುಹು ನಿನಗುಂಟಾದಡಿತ್ತಲು
ಫಲುಗುಣನ ಕೂಡಾಡು ನಡೆ ಮರು
ವಲಗೆಯನು ಭೀಮನಲಿ ಬೇಡಿನ್ನೆಂದನಾ ಶಲ್ಯ ೪೪

ಎನಲು ಕಿಡಿಕಿಡಿವೋಗಿ ಭೀಮಾ
ರ್ಜುನರ ತೋರಾದರೆ ಎನುತ ನಿಜ
ಧನುವ ಮಿಡಿದಬ್ಬರಿಸಲಿತ್ತಲು ರಾಯದಳದೊಳಗೆ
ಅನಿಲಜನ ಕಾಲಾಟ ಕದಳೀ
ವನದ ಕಾಡಾನೆಯ ಮೃಗಾಳಿಯ
ವನಚರರ ದೆಖ್ಖಾಳದಬ್ಬರ ಕಾಣಲಾಯ್ತೆಂದ ೪೫

ಮಂಡಳಿಸಿ ಬಲಜಲಧಿ ಸುಳಿ ಸುಳಿ
ಗೊಂಡು ಸಿಕ್ಕಿದ ಕೌರವೇಂದ್ರನ
ಕೊಂಡು ಹಿಂಗುವ ಜೋಕೆ ನೂಕದೆ ಡಗೆಯು ಡಾವರದ
ಗಂಡುಗುಂದಿನ ಬೀತ ಬಿರುದಿನ
ತೊಂಡುಗೇಡಿನ ಜಯದ ಜಾರಿನ
ಖಂಡ ಶೌರ್‍ಯದ ಧೀರರಿದ್ದುದು ನೃಪನ ಬಳಸಿನಲಿ ೪೬

ವಾಯುದಲಿ ಕೌರವನ ವಿಜಯ
ಶ್ರೀಯು ಸೆರೆವೋಯಿತ್ತು ಶಿವ ಶಿವ
ಕಾಯಲಾಪವರಿಲ್ಲಲಾ ಗುರುಸೂನು ಮೊದಲಾದ
ನಾಯಕರು ದುಷ್ಕೀರ್ತಿ ನಾರಿಯ
ನಾಯಕರು ಸುಪಲಾಯನದ ನಿ
ರ್ಣಾಯಕರು ಮಝು ಪೂತುರೆಂದುದು ನಿಖಿಳ ಪರಿವಾರ ೪೭

ಕೇಳಿದನು ಕಳವಳವ ಕಿವಿಗೊ
ಟ್ಟಾಲಿಸಿದನೆಲೆ ಕರ್ಣ ಕರ್ಣ ಥ
ಡಾಳ ರವವೇನದು ಸುಯೋಧನ ಸೈನ್ಯ ಮಧ್ಯದಲಿ
ಖೂಳ ಬಿಡಿಸಾ ಭೀಮಸೇನನ
ತೋಳುವಲೆಯಲಿ ಸಿಕ್ಕಿದನು ಭೂ
ಪಾಲನಕಟಕಟೆನುತ ತೇಜಿಯ ತಿರುಹಿದನು ಶಲ್ಯ ೪೮

ಹದಿನಾಲ್ಕನೆಯ ಸಂಧಿ

ಸೂ. ಮರಳಿದನು ಪಾಳೆಯಕೆ ಪಾಂಡವ
ರರಸನಿತ್ತಲು ಪಾರ್ಥ ಕೇಳಿದು
ಬರುತ ಗೆಲಿದನು ಸಕಲ ಕೌರವ ರಾಯ ಮೋಹರವ

ದೂರುವರಲೇ ಕರ್ಣನೋಲೆಯ
ಕಾರತನವನು ಹಿಂದೆ ಕೆಲಬರು
ದೂರಿದರೆ ಫಲವೇನು ಕದನದಲವಗೆ ಸರಿಯಹರೆ
ಹಾರಲೂದಿದನಹಿತ ರಾಯನ
ನೀರತನವನು ತನ್ನ ರಾಯನ
ಸೂರೆಗಡಹಾಯ್ದುರಿಯ ತಡೆದನು ಭೂಪ ಕೇಳೆಂದ ೧

ಅರರೆ ಸಿಂಹದ ತೋಳ ತೆಕ್ಕೆಯ
ಕರಿಯು ಸೆಳೆವಂದದಲಿ ಗರುಡನ
ಕೊರಳ ಬಿಲದಲಿ ಬಿದ್ದ ಸರ್ಪನ ಸೇದುವಂದದಲಿ
ಧರಣಿಪಾಲನ ತೆಗೆದು ಭೀಮನ
ಬರಿಯನೆಚ್ಚನು ಜೋಡ ಜೋಕೆಯ
ಜರುಹಿದನು ಜವಗೆಡಿಸಿದನು ನಿನ್ನಾತನನಿಲಜನ ೨

ಅರಸ ಕೇಳೈ ಕರ್ಣ ಭೀಮರ
ಧರಧುರದ ದೆಖ್ಖಾಯ್ಲತನ ಗ
ಬ್ಬರಿಸಿತಾಹವ ಗರ್ವಿತರ ಗಾಢಾಯ್ಲ ಚೇತನವ
ಧರಣಿಪಾಲನನಿತ್ತಲವರಾ
ದರಿಸಿದರು ಸಹದೇವ ನಕುಳರು
ಸರಳ ಕಿತ್ತರು ಘಾಯವನು ತೊಳೆತೊಳೆದು ಮಂತ್ರಿಸುತ ೩

ದುರುದುರಿಪ ಬಿಸಿರಕ್ತವೇರಿನೊ
ಳೊರತೆ ಮುಸಗಿತು ಬಹಳ ಧೈರ್‍ಯದ
ಹೊರಿಗೆ ನುರಿದುದು ಮೂಗಿನುಸಿರುಬ್ಬೆದ್ದುದಡಿಗಡಿಗೆ
ಅರಿವು ಮರವೆಗಳೊಂದನೊಂದನು
ಮುರಿದು ನೂಕಿದವವನಿಪತಿ ಕಡು
ವೆರಗ ಕೇಣಿಯ ಕೊಂಡವೋಲಿದ್ದನು ವಿಚೇಷ್ಟೆಯಲಿ ೪

ಜಯುಸಮರ ಜಾರಾಯ್ತು ತೆಗೆ ಪಾ
ಳೆಯಕೆ ಮರಳಿಚು ರಥವನಿನ್ನೆ
ಲ್ಲಿಯದು ನೆಲ ನೆರೆ ಕುದಿವ ಕುರುಡನ ಮಕ್ಕಳೇ ಕೊಳಲಿ
ನಿಯತವೆಮ್ಮಿಬ್ಬರಿಗೆ ರಾಯನ
ಲಯವೆ ಲಯವಿನ್ನೆನುತಲಾ ಮಾ
ದ್ರಿಯ ಕುಮಾರರು ದೊರೆ ಸಹಿತ ತಿರುಗಿದರು ಪಾಳೆಯಕೆ ೫

ರಾಯರಥ ಮಡಮುರಿಯೆ ಮುರಿದುದು
ನಾಯಕರು ಪಾಂಚಾಲಕರು ವಾ
ನಾಯುಜರು ಮತ್ಸ್ಯ ಪ್ರಬುದ್ಧಕ ಸೋಮಕಾದಿಗಳು
ವಾಯುಹತಿಯಲಿ ಮೇಘದೊಡ್ಡಿಂ
ಗಾಯಸವು ಕರ್ಣಾಸ್ತ್ರಹತಿಯಲ
ಪಾಯವರಿ ರಾಯರಿಗಪೂರ್ವವೆ ಭೂಪ ಕೇಳೆಂದ ೬

ಮುರಿದುದೈ ರಿಪುರಾಯದಳ ಹಗೆ
ಹರಿದುದೈ ಕುರುಪತಿಗೆ ಹರುಷವ
ಕರೆದುದೈ ಕರ್ಣಪ್ರತಾಪಾಟೋಪ ಜೀಮೂತ
ಇರಿತ ಮರೆದುದು ನಿನ್ನವರ ಬೊ
ಬ್ಬಿರಿತ ಜರೆದುದು ವಿಜಯಲಕ್ಷ್ಮಿಯ
ಸೆರಗು ಸೋಂಕಿತು ಕೌರವೇಶ್ವರಗರಸ ಕೇಳೆಂದ ೭

ಅರಿಬಲದ ಲಗ್ಗೆಯನು ನಿಜ ಮೋ
ಹರದ ಮುರಿವಿನ ಸುಗ್ಗಿಯನು ಧರ
ಧುರದ ಪರಬಲದೊಸಗೆಯನು ನಿಜಬಲದ ಹಸುಗೆಯನು
ಮುರಮಥನ ನೋಡಿದನು ಮೂಗಿನ
ಬೆರಳ ತೂಗುವ ಮಕುಟದೊಲಹಿನ
ಬೆರಳ ಕುಡಿಚಮ್ಮಟಿಗೆಯಲಿ ಸೂಚಿಸಿದನರ್ಜುನಗೆ ೮

ಆರ ರಥವಾ ಹೋಹುದದು ಹಿಂ
ದಾರವರು ಬಳಿವಳಿಯಲೊಗ್ಗಿನ
ಲೋರಣಿಸಿ ಮುಂಚುವರು ಟೆಕ್ಕೆಯವಾರ ತೇರಿನದು
ಆರ ದಳವದು ಧುರಪಲಾಯನ
ಚಾರು ದೀಕ್ಷಿತರಾಯ್ತು ಫಲುಗುಣ
ಧಾರುಣೀಪತಿಯಾಣೆ ಹೇಳೆಂದಸುರರಿಪು ನುಡಿದ ೯

ನೋಡಿ ನೋಡಿ ಕಿರೀಟವನು ತೂ
ಗಾಡಿದನು ಕಂಬನಿಗಳಾಲಿಯೊ
ಳೀಡಿರಿದು ಸೋರಿದವು ಸೊಂಪಡಗಿತು ಮುಖಾಂಬುಜದ
ಹೂಡಿದಂಬಿನ ತೋಳ ತೆಗಹಿನ
ಬಾಡಿದುತ್ಸಾಹದ ವಿತಾಳದ
ಬೀಡಿಕೆಯ ಬೇಳುವೆಗೆ ಬೆಬ್ಬಳಿವೋದನಾ ಪಾರ್ಥ ೧೦

ಸೇನೆ ಮುರಿಯಲಿ ಕೌರವನ ದು
ಮ್ಮಾನ ಹರಿಯಲಿ ನನಗೆ ಚಿತ್ತ
ಗ್ಲಾನಿಯೆಳ್ಳನಿತಿಲ್ಲ ಕಟ್ಟಲಿ ಗುಡಿಯ ಗಜನಗರ
ಆ ನರೇಂದ್ರನ ಸಿರಿವೊಗಕೆ ದು
ಮ್ಮಾನವೋ ಮೇಣ್ ಸುರಪುರಕೆ ಸಂ
ಧಾನವೋ ನಾನರಿಯೆನಳ್ಳೆದೆಯಾದುದೇನಗೆಂದ ೧೧

ಧರಣಿಪತಿ ಸಪ್ರಾಣನೇ ಗಜ
ಪುರದ ರಾಜ್ಯಕೆ ನಿಲಿಸುವೆನು ಮೇಣ್
ಸುರರೊಳಗೆ ಸಮ್ಮೇಳವೇ ಕುಂತೀಕುಮಾರಂಗೆ
ಅರೆಘಳಿಗೆ ಧರ್ಮಜನ ಬಿಟ್ಟಾ
ನಿರೆನು ಮುರಹರ ರಥವ ಮರಳಿಚು
ಮರಳಿಚೈ ರಥ ಮುಂಚುವುದೊ ಮನ ಮುಂಚುವುದೊ ಎಂದ ೧೨

ತಿರುಹಿ ವಾಘೆಯ ಹಿಡಿದು ಹರಿ ಹೂಂ
ಕರಿಸಿ ಬಿಟ್ಟನು ರಥವನಾತನ
ಮುರಿವ ಕಂಡುದು ಲಳಿ ಮಸಗಿ ಸಮುಸಪ್ತಕರ ಸೇನೆ
ಅರರೆ ನರ ಪೈಸರಿಸಿದನೊ ಪೈ
ಸರಿಸಿದನೊ ಫಡ ಹೋಗಬಿಡದಿರಿ
ಕುರುನೃಪಾಲನ ಪುಣ್ಯವೆನುತಟ್ಟಿದರು ಸೂಠಿಯಲಿ ೧೩

ಕವಿದುದದುಭುತ ಬಲ ಮುರಾರಿಯ
ತಿವಿದರಡಗಟ್ಟಿದರು ತೇಜಿಯ
ಜವಗೆಡಿಸಿ ತಲೆಯೂರ ತಡೆದರು ತುಡುಕಿದರು ನೊಗನ
ಅವರನೊಂದೇ ನಿಮಿಷದಲಿ ಪರಿ
ಭವಿಸಿ ನಡೆತರೆ ಮುಂದೆ ಗುರುಸಂ
ಭವನ ರಥವಡಹಾಯ್ದುದವನೀಪಾಲ ಕೇಳೆಂದ ೧೪

ಇತ್ತಲಿತ್ತಲು ಪಾರ್ಥ ಹೋಗದಿ
ರಿತ್ತಲಶ್ವತ್ಥಾಮನಾಣೆ ಮ
ಹೋತ್ತಮರು ಗುರು ಭೀಷ್ಮರಲಿ ಮೆರೆ ನಿನ್ನ ಸಾಹಸವ
ಕಿತ್ತು ಬಿಸುಡುವೆನೆಸುವನಿದಿರಾ
ಗತ್ತಲೆಲವೋ ನಿನ್ನ ಜೋಕೆಯ
ಜೊತ್ತಿನಾಹವವಲ್ಲೆನುತ ತರುಬಿದನು ಗುರುಸೂನು ೧೫

ಆವುದಿಲ್ಲಿಗುಪಾಯವೀತನ
ಭಾವ ಬೆಟ್ಟಿತು ತೆರಹುಗೊಡನಿಂ
ದೀ ವಿಸಂಧಿಯೊಳರಿಯೆನವನಿಪನಾಗುಹೋಗುಗಳ
ದೇವ ಹದನೇನೆನುತ ವರ ಗಾಂ
ಡೀವಿ ಮುಕ್ತಕಳಂಬಕಾಂಡ
ಪ್ರಾವರಣದಲಿ ಮುಸುಕಿದನು ಗುರುನಂದನನ ರಥವ ೧೬

ಖೂಳ ತೆಗೆ ಹೆರಸಾರು ಠಕ್ಕಿನ
ಠೌಳಿಯಾಟವೆ ಕದನ ಕುಟಿಲದ
ಬೇಳುವೆಯ ಡೊಳ್ಳಾಸ ಮದ್ದಿನ ಮಾಯೆ ನಮ್ಮೊಡನೆ
ಆಳುತನವುಳ್ಳೊಡೆ ಮಹಾಸ್ತ್ರದ
ಜಾಳಿಗೆಯನುಗಿಯೆನುತ ಪಾರ್ಥನ
ಕೋಲುಗಳ ನೆರೆ ತರಿದನು ತೀವಿದನಂಬಿನಲಿ ನಭವ ೧೭

ಸರಳ ಹರಿಮೇಖಳೆಗೆ ನೀವೇ
ಗುರುಗಳಲ್ಲಾ ನಿಮ್ಮ ವಿದ್ಯೆಯ
ಹುರುಳುಗೆಡಿಸುವಿರೆನುತ ಗುರುಸುತನಂಬ ಹರೆಗಡಿದು
ತುರಗದಲಿ ರಥಚಕ್ರದಲಿ ಕೂ
ಬರದೊಳೀಸಿನಲಚ್ಚಿನಲಿ ದು
ರ್ಧರ ಶಿಲೀಮುಖ ಜಾಳವನು ಜೋಡಿಸಿದನಾ ಪಾರ್ಥ ೧೮

ತಳಿವ ನಿನ್ನಂಬಿನ ಮಳೆಗೆ ಮನ
ನಲಿವ ಚಾತಕಿಯರಿಯೆಲಾ ಕಳ
ವಳಿಸದಿರು ಕೊಳ್ಳಾದಡೆನುತೆಚ್ಚನು ಧನಂಜಯನ
ಹೊಳೆವ ಕಣೆ ಹೊಕ್ಕಿರಿದ ದಾರಿಯೊ
ಳುಳಿದ ಕಣೆ ದಾಂಟಿದವು ಗುರುಸುತ
ತುಳುಕಿದನು ಫಲುಗುಣನ ಮೈಯಲಿ ರಕುತ ರಾಟಳವ ೧೯

ಕಡುಗಿದರೆ ಕಾಲಾಗ್ನಿ ರುದ್ರನ
ಕಡುಹನಾನುವರೀತನೇ ಸೈ
ಗೆಡೆವ ರೋಮದ ಧೂಮ್ರವಕ್ತ್ರದ ಸ್ವೇದಬಿಂದುಗಳ
ಜಡಿವ ರೋಷದ ಭರದಲಡಿಗಡಿ
ಗೊಡಲನೊಲೆದು ಮಹಾಸ್ತ್ರದಲಿ ಕಡಿ
ಕಡಿದು ಬಿಸುಟನು ಗುರುಸುತನ ಸಾರಥಿಯ ರಥಹಯವ ೨೦

ಧನುವನುರು ಬತ್ತಳಿಕೆಗಳನುಂ
ಬಿನ ಹೊದೆಯನುರು ಟೆಕ್ಕೆಯವ ಜೋ
ಡಿನ ಬನವ ಕಡಿದಿಕ್ಕಿದನು ಸೆಕ್ಕಿದನು ಸರಳುಗಳ
ಧನು ವರೂಥದ ಹಾನಿ ಗುರು ನಂ
ದನನ ಗರ್ವವಿನಾಶಿಯೇ ಫಡ
ಎನುತ ಪಾರ್ಥನ ತರುಬಿ ನಿಂದನು ಸೆಳೆದಡಾಯುಧದಿ ೨೧

ದಿಟ್ಟನೈ ಗುರುಸೂನು ಶಿವ ಜಗ
ಜಟ್ಟಿಯಲ್ಲಾ ಕೌರವೇಂದ್ರನ
ಥಟ್ಟಿನಲಿ ಭಟರಾರೆನುತ ತಲೆದೂಗಿದನು ಪಾರ್ಥ
ಇಟ್ಟಣಿಸಿದನು ಹಿಂದೆ ಕೃಪನಡ
ಗಟ್ಟಿದನು ಸಮಸಪ್ತಕರು ಸಲೆ
ಮುಟ್ಟಿ ಬಂದರು ಕೌರವೇಶ್ವರ ಸಕಲಬಲ ಸಹಿತ ೨೨

ತಡೆಯಿ ಪಾರ್ಥನನಿವನ ರಾಯನ
ಕೆಡಹಿದನು ಕಲಿ ಕರ್ಣನೀಗಳೆ
ಮುಡುಹುವನು ಪವನಜನನೊಂದರೆಘಳಿಗೆ ಮಾತ್ರದಲಿ
ಬಿಡಿದಿರೀತನನೆನುತ ಕುರುಪತಿ
ಯೊಡನೆ ದುಶ್ಶಾಸನ ಕೃಪಾದಿಗ
ಳಡಸಿದರು ಕೆಂಗೋಲ ಮಳೆಯಲಿ ನಾದಿದರು ನರನ ೨೩

ಅವನಿಪನ ಕಾಣಿಕೆಗೆ ಬಹು ವಿ
ಘ್ನವನು ಬಲಿದುದೆ ದೈವ ಯಂತ್ರವ
ನವಗಡಿಸಿ ನೂಕುವರೆ ನಮ್ಮಳವೇ ಶಿವಾ ಎನುತ
ಕವಲುಗೋಲ್ಗೆದರಲಿ ಕೃಪ ಕೌ
ರವನ ತಮ್ಮಂದಿರ ಸುಸನ್ನಾ
ಹವ ವಿಸಂಚಿಸಿ ಬಗಿದು ಸಮಸಪ್ತಕರನೊಡೆಹಾಯ್ಸಿ ೨೪

ಹೊಗಹೊಗಲು ಮತ್ತೆ ಕುರುಬಲ
ಸಾಗರದ ಭಟಲಹರಿ ಲಳಿಯಲಿ
ತಾಗಿದರು ತುಡುಕಿದರು ತಡೆದರು ನಾಲ್ಕು ದೆಸೆಗಳಲಿ
ನೀಗಿದರು ಶಸ್ತ್ರಾಸ್ತ್ರವನು ಕೈ
ಲಾಗಿನಲಿ ಮರಳಿದರು ಪುನರಪಿ
ತಾಗಿದರು ಗುರುಸೂನು ಕೃತವರ್ಮಾದಿ ನಾಯಕರು ೨೫

ಮೇಲೆ ಬಿದ್ದುದು ಮತ್ತೆ ಬಲ ಮೇ
ಘಾಳಿ ನೂಕಿತು ನರನ ರಥ ಸುಳಿ
ಗಾಳಿಯಂತಿರೆ ತಿರುತಿರುಗಿದುದು ವಿಶ್ವತೋಮುಖದಿ
ಹೇಳಲೇನವನೀಶ ಚಪಳ ಛ
ಡಾಳ ಪಾರ್ಥನ ವಿಕ್ರಮಾಗ್ನಿ
ಜ್ವಾಲೆಯಲಿ ನೆರೆ ಸೀದು ಸೀಕರಿವೋಯ್ತು ಕುರುಸೇನೆ ೨೬

ಗುರುಸುತನ ಮುರಿಯೆಚ್ಚು ಶಕುನಿಯ
ಪರಿಭವಿಸಿ ಕೃತವರ್ಮಕನ ವಿ
ಸ್ತರಿಸಲೀಯದೆ ಕೇರಳ ದ್ರವಿಡಾಂಧ್ರ ಕೌಸಲರ
ಹುರುಳುಗೆಡಿಸಿ ಸುಯೋಧನನ ಮೊಗ
ಮುರಿಯಲೆಚ್ಚು ಸುಷೇಣ ಗೌತಮ
ರುರವಣೆಯ ನೆಗ್ಗೊತ್ತಿ ಹಾಯ್ದನು ಮತ್ತೆ ಸೈವರಿದು ೨೭

ಆವರಿಸಿದುದು ಮತ್ತೆ ಹೊಸ ಮೇ
ಳಾವದಲಿ ಕುರುಸೇನೆ ಘನ ಗಾಂ
ಡೀವ ವಿಗಳಿತ ವಿಶಿಖ ವಿಸರದ ವಹಿಗೆ ವಂಚಿಸದೆ
ಲಾವಣಿಗೆಗೊಳಲಲಸಿ ಯಮನನು
ಜೀವಿಗಳು ಜಡರಾಯ್ತು ಫಲುಗುಣ
ನಾವ ವಹಿಲದಲೆಸುವನೆಂಬುದನರಿಯೆ ನಾನೆಂದ ೨೮

ಜಾಳಿಸಿತು ರಥ ಜಡಿವ ಕೌರವ
ನಾಳ ರೈಂಪಿಸಿ ಡೊಂಬು ಮಾಡುವ
ಜಾಳ ಝಾಡಿಸಿ ಬೈದು ಹೊಕ್ಕನು ಮತ್ತೆ ಗುರುಸೂನು
ಖೂಳ ಫಡಫಡ ಜಾರದಿರು ತೋ
ರಾಳ ತೂರಿದ ಡೊಂಬು ಬೇಡ ವಿ
ಡಾಳ ವಿದ್ಯೆಗಳೆಮ್ಮೊಡನೆಯೆನುತೆಚ್ಚನರ್ಜುನನ ೨೯

ಗುರುಸುತನನೊಟ್ಟೈಸಿ ಫಲುಗುಣ
ತಿರುಗಿ ಹಾಯ್ದನು ಮುಂದೆ ಶರಪಂ
ಜರವ ಹೂಡಿದನೀತನಾತನ ಬಯ್ದು ಬೆಂಬತ್ತಿ
ಸರಳ ಹರಹಿನ ಹೂಟವನು ಕಾ
ಹುರದ ಕಡುಹಿನಲೊದೆದು ಬೊಬ್ಬಿರಿ
ದುರವಣಿಸಿದನು ಪಾರ್ಥನೀತನ ಧನುವ ಖಂಡಿಸಿದ ೩೦

ಧನು ಮುರಿಯೆ ದಿಟ್ಟಾಯ ತನವೀ
ತನಲಿ ಸಾಕಿನ್ನೆನುತ ಗುರು ನಂ
ದನನು ಮುರಿದನು ಹೊಗರು ಮೋರೆಯ ಹೊತ್ತ ದುಗುಡದಲಿ
ಅನಿಲಸೂನುವ ಹಳಚಿದರು ಮು
ಮ್ಮೊನೆಯ ಬೋಳೆಯ ಮೈಯ ಕೊಳು ಕೊಡೆ
ಯೆನಗೆ ತನಗೆಂಬಗ್ಗಳಿಕೆಗಳ ಮೆರೆದರಿಚ್ಚೆಯಲಿ ೩೧

ತರಣಿತನಯನ ತೆಗೆದು ಭೀಮನೊ
ಳುರವಣಿಸಿ ಗುರುಸೂನು ಕಾದು
ತ್ತಿರೆ ಧನಂಜಯ ತೆರಳಿದನು ಪಾಳೆಯದ ಪಥವಿಡಿದು
ಅರರೆ ಫಲುಗುಣನೋಟವನು ಸಂ
ಗರ ಸಮರ್ಥರ ನೋಟವನು ನ
ಮ್ಮರಸ ಕಂಡನಲಾ ಎನುತ ನೂಕಿದನು ಕಲಿಕರ್ಣ ೩೨

ನೆರೆದುದಲ್ಲಿಯದಲ್ಲಿ ಕಹಳೆಯ
ಧರಧುರದ ನಿಸ್ಸಾಳ ಸೂಳಿನ
ಮೊರೆವ ಭೇರಿಯ ರಾಯಗಿಡಿಗನ ಜಡಿವ ಚಂಬಕನ
ತುರಗ ಕರಿ ರಥ ಪಾಯದಳ ಚಾ
ಮರದ ಧವಳಚ್ಛತ್ರ ಪಟ ಪಳ
ಹರದ ಪಡಪಿನಲೌಕಿ ನಡೆದುದು ಮುಂದೆ ಪಾಯದಳ ೩೩

ಕವಿದು ಕೆಂಧೂಳಿಡುವ ಸೇನಾ
ಟವಿಯ ನೋಡುತ ಹಿಂದೆ ಕರ್ಣನ
ಲವಲವಿಕೆಯಾಯತವ ಕಂಡನು ಕದನಕೇಳಿಯಲಿ
ಅವನಿಪನ ದರುಶನವೆನಗೆ ಸಂ
ಭವಿಸಲರಿಯದು ಭಾಪುರೇ ಕೌ
ರವ ಮಹಾರ್ಣವವೆನುತ ಮಕುಟವ ತೂಗಿದನು ಪಾರ್ಥ ೩೪

ಬಳಿಕ ಸೇನಾಸ್ತಂಭ ಶರದಲಿ
ನಿಲಿಸಿದನು ಮಾರ್ಬಲವನಿತ್ತಲು
ಚಳೆಯದಲಿ ಹಿಮ್ಮೆಟ್ಟುತಿರೆ ಕಂಡನು ಧನಂಜಯನ
ಹೊಳಹು ದೂವಾಳಿಯಲಿ ಪಾರ್ಥನ
ಕೆಲಕೆ ಬಿಟ್ಟನು ರಥವ ನಿಲು ನಿ
ಲ್ಲೆಲವೊ ಹೋಗದಿರೆನುತ ಬೆಂಬತ್ತಿದನು ಕಲಿಕರ್ಣ ೩೫

ಕಂಡನರ್ಜುನನಿದಿರೊಳಿವನು
ದ್ದಂಡತನವನು ನೃಪತಿ ಚಿಂತಾ
ಖಂಡಧೈರ್ಯರು ನಾವಲಾ ಹೊತ್ತಲ್ಲ ಕಾದುವರೆ
ಕಂಡಿರೇ ಮುರವೈರಿ ದಳಪತಿ
ಚಂಡಬಳನಹ ನಡುಹಗಲ ಮಾ
ರ್ತಾಂಡನಂತಿರೆ ತೋರುತೈದನೆ ರಥವ ತಿರುಹೆಂದ ೩೬

ಜೀವಿಸಿರಲಾವಾವ ಲೇಸಿನ
ಠಾವ ಕಾಣೆನು ಜೀಯ ಕರ್ಣನ
ನಾವು ತೊಡಚುವರಲ್ಲ ತೆರಳಿಚು ಪಾಳೆಯಕೆ ರಥವ
ಈ ವಿಗಡನಂತಿರಲೆನುತ ಗಾಂ
ಡೀವಿ ಚಾಪವನಿಳುಹೆ ರಥವನು
ದೇವಕಿಸುತ ನೂಕಿದನು ಪವಮಾನ ವೇಗದಲಿ ೩೭

ಬರುತ ಭೀಮನ ಕಂಡರಾತನ
ಹೊರೆಗೆ ಬಿಟ್ಟರು ರಥವನರ್ಜುನ
ಕರೆದು ಬೆಸಗೊಂಡನು ನೃಪಾಲನ ಕ್ಷೇಮ ಕೌಶಲವ
ಅರಸನಿಂದು ಸಜೀವಿಯೋ ಸುರ
ಪುರ ನಿವಾಸಿಯೊ ಹದನನೇನೆಂ
ದರಿಯೆನೀ ಸಂಗ್ರಾಮ ಧುರವೆನಗೆಂದನಾ ಭೀಮ ೩೮

ಆದಡೆಲೆ ಪವಮಾನಸುತ ನೀ
ನಾದರಿಸು ನಡೆ ನೃಪತಿಯನು ನಾ
ಕಾದುವೆನು ಕೌರವರ ಸಕಲಬಲ ಪ್ರಘಾಟದಲಿ
ಕೈದುಕಾರರು ನಿಖಿಳ ದೆಸೆಗಳ
ಲೈದಿ ಬರುತಿದೆ ನೀ ಮರಳು ನಾ
ಛೇದಿಸುವೆನರೆಘಳಿಗೆ ಮಾತ್ರದಲೆಂದನಾ ಪಾರ್ಥ ೩೯

ಎಲೆ ಧನಂಜಯ ನೀನೆ ಬಲುಗೈ
ಯಯುಳಿದವರು ರಣಖೇಡರೇ ಕುರು
ಬಲವನೊಬ್ಬನೆ ಕೇಣಿಗೊಂಡೆನು ಕರ್ಣ ಮೊದಲಾಗಿ
ಅಳಿಕಿಸುವೆನೀಕ್ಷಣಕೆ ತನ್ನ
ಗ್ಗಳಿಕೆಯನು ನೋಡವನಿಪಾಲನ
ಬಳಲಿಕೆಯ ಸಂತೈಸು ನಡೆ ನೀನೆಂದನಾ ಭೀಮ ೪೦

ಹದಿನೈದನೆಯ ಸಂಧಿ

ಸೂ. ರಾಯ ರಿಪುಬಲ ವಿಪಿನ ದಹನನ
ಜೇಯನೇಕಾಂಗದಲಿ ಕೌರವ
ರಾಯ ಬಲಬಹಳಾಂಬುಧಿಯ ಕಲಕಿದನು ಕಲಿ ಭೀಮ

ಕೇಳು ಧೃತರಾಷ್ಟ್ರಾವನಿಪ ದು
ವ್ವಾಳಿಯಲಿ ಕೃಷ್ಣಾರ್ಜುನರು ನಿಜ
ಪಾಳೆಯಕೆ ತಿರುಗಿದರು ಬಳಿಕಿತ್ತಲು ವೃಕೋದರನ
ಆಳುತನದ ಸಘಾಡಿಕೆಯ ನಾ
ಹೇಳಲರಿಯೆನು ಸಕಲ ಕುರುಬಲ
ಜಾಲವೊಂದೆಸೆ ಭೀಮನೊಂದೆಸೆ ಕೇಳು ಕೌತುಕವ ೧

ಸೆರಗ ಬೀಸಿತು ನಿನ್ನವರು ಬೊ
ಬ್ಬಿರಿದರರ್ಜುನನಿತ್ತ ಬೆನ್ನಿನ
ತೆರಿಗೆಯುತ್ಸವ ಧನವ ತೆಗೆ ಭಂಡಾರದೊಳಗೆನುತ
ತುರುಗಿತಲ್ಲಿಯದಲ್ಲಿ ಲಗ್ಗೆಯ
ಬಿರುದನಿಯ ನಿಸ್ಸಾಳ ಕಹಳೆಯ
ಜರಹು ಜೋಡಿಸಿ ಜರುಹಿತಡಕಿಲು ಜಗದ ಜೋಡಿಗಳ ೨

ಆರು ಸಾವಿರ ಕುದುರೆ ಕರಿಘಟೆ
ಮೂರು ಸಾವಿರ ಸಾವಿರದ ನಾ
ನೂರು ರಥ ಪರಿಗಣನೆಗೊಂದೇ ಲಕ್ಕ ಪಾಯದಳ
ನೂರು ರಥದಲಿ ಸರಳ ಹೊದೆ ಮೂ
ನೂರು ಪರಿಚಾರರು ಸಹಿತ ಮೈ
ದೋರಿ ನಿಂದನು ಭೀಮನೊಬ್ಬನೆ ತರುಬಿ ಕುರುಬಲವ ೩

ಅರಸ ಕೇಳೈ ನಿಮ್ಮ ದಳದೊಳು
ಗುರುತನುಜ ಕೃತವರ್ಮ ಕೃಪ ನಿ
ನ್ನರಸುಮಗ ರಾಧೇಯ ಶಕುನಿ ಸುಶರ್ಮ ವೃಷಸೇನ
ಮರು ಯವನ ಹಮ್ಮೀರ ಕೇರಳ
ತುರುಕ ಬಾಹ್ಲಿಕ ಮಗಧ ನೇಪಾ
ಳರು ಕುರೂಷಾದಿಗಳು ಸಂಖ್ಯಾತೀತ ಬಲವೆಂದ ೪

ಮಾಳವಾಂಧ್ರ ಪುಳಿಂದ ಬರ್ಬರ
ಗೌಳ ವಂಗ ದ್ರವಿಡ ಸಿಂಹಳ
ಲಾಳ ಗುರ್ಜರ ಚೀನ ಭೋಟ ಕರಾಳ ಖರ್ಪರರು
ಚೋಳ ಸಿಂಧು ಕಳಿಂಗ ಸಗರ ವ
ರಾಳ ಪಾರ್ಯಾತ್ರಪ್ರಮುಖ ಭೂ
ಪಾಲರಿವರೊಡ್ಡಿನಲಿ ಸಂಖ್ಯಾರಹಿತ ದಳವೆಂದ ೫

ಇದ್ದುದಾ ಸಮಸಪ್ತಕರು ಜಗ
ವದ್ದ ಜಲಧಿಯ ತೆರೆಯವೊಲು ಮುಳಿ
ದೆದ್ದ ಹರಿ ಬಲದಂತೆ ದುಶ್ಶಾಸನನ ಪಾಯದಳ
ದೊದ್ದೆಯಲ್ಲದೆ ದೊರೆಗಳೇ ಜರೆ
ದೆದ್ದು ದೆರಡಕ್ಷೋಣಿಯನಿಬರಿ
ಗಿದ್ದನೊಬ್ಬನೆ ಭೀಮನವನೀಪಾಲ ಕೇಳೆಂದ ೬

ಹೇಳು ಸಂಜಯ ವಿಸ್ತರಿಸಿ ಕಾ
ಲಾಳು ಮೇಲಾಳಿನಲಿ ಭೀಮನ
ಕಾಳೆಗದ ಕೌತುಕವನೀ ಹೆಬ್ಬಲದ ದುರ್ಬಲವ
ಆಳು ಹಿರಿದಿದ್ದೇನು ಫಲ ಹೀ
ಹಾಳಿ ದೈವಕೆ ಬೇರೆ ಪರಿಯಂ ವಿ
ತಾಳವಿಲ್ಲ ವಿಪಕ್ಷಪಾತದೊಳೆಂದನಂಧನೃಪ ೭

ಅರಸ ಕೇಳಾದಡೆ ಮಹಾ ಸಾ
ಗರಕೆ ಮುನಿ ಮಂಡಿಸಿದವೊಲು ಸಂ
ಹರಣ ದಿನದಲಿ ಜಗಕೆ ಮಲೆವ ಮಹೇಶನಂದದಲಿ
ಅರಿ ಹಿರಣ್ಯಾಕ್ಷನ ಬಲಕೆ ಕೋ
ಡೆರಗಿ ನಿಂದ ವರಾಹನಂತಿರೆ
ಪರಬಲಾಂತಕ ಭೀಮ ನಿಂದನು ತರುಬಿ ಪರಬಲವ ೮

ಆತ ನಿಂದಂಘವಣೆಯಂನು ನಿ
ನ್ನಾತ ಕಂಡನು ಮೆಚ್ಚಿದನು ಮಝ
ಪೂತು ಭೀಮ ಸುಧೀರನೈ ಸದ್ಗುಣಕೆ ಮತ್ಸರವೆ
ಈತನೊಬ್ಬನೆ ಕೌರವರಸಂ
ಖ್ಯಾತವೆಂಬುದು ಲೋಕ ಸಾಕಿ
ನ್ನೀತ ಮರಳಲಿ ಎಂದು ಭಟ್ಟರನಟ್ಟಿದನು ಭೂಪ ೯

ಬಂದು ಭಟ್ಟರು ಭೀಮಸೇನಂ
ಗೆಂದರೆಲೆ ಕೌಂತೇಯ ನೀ ನಿ
ನ್ನಂದಿನಗ್ಗದ ದುಂದುಮಾರನ ಕಾರ್ತವೀರ್ಯಕನ
ಸಂದ ಭರತ ಭಗೀರಥಾದಿಗ
ಳಿಂದ ಮಿಗಿಲು ಮಹಾಪ್ರಚಂಡರೊ
ಳಿಂದು ನಿನಗೆಣೆಯಾರು ದನುಜಾಮರರ ಥಟ್ಟಿನಲಿ ೧೦

ರಾಯ ಜಗಜಟ್ಟಿಗಳು ರಿಪು ಕುರು
ರಾಯ ಥಟ್ಟಿನೊಳಿನಿಬರಿಗೆ ನಿ
ನ್ನಾಯತದಿ ನಿಲುವಂಘವಣೆಗಾವೇನ ಹೇಳುವೆವು
ರಾಯನನು ಸಂತೈಸುವುದು ಮಾ
ದ್ರೇಯ ಫಲುಗುಣ ಸಹಿತ ನಿಲು ನಿ
ನ್ನಾಯತದಿ ನಮ್ಮರಸನೊಲ್ಲನು ನಿನ್ನೊಡನೆ ರಣವ ೧೧

ಆಗಲದು ತಪ್ಪೇನು ಧರ್ಮಜ
ನಾಗುಹೋಗರ್ಜುನನ ಮೇಲೆ ವಿ
ಭಾಗದಲಿ ಬಂದುದು ಸುಯೋಧನ ಸೈನ್ಯಧುರವೆಮಗೆ
ಈಗಳೊಬ್ಬನೆ ವಿಷಮ ವಿಗ್ರಹ
ಯಾಗದಲಿ ರಿಪುಸುಭಟ ಪಶು ಹಿಂ
ಸಾಗಮವ ತೋರುವೆನು ಸೈರಿಸಿಯೆಂದನಾ ಭೀಮ ೧೨

ವಿವಿಧ ಮಣಿ ಕನಕಾದಿ ವಸ್ತುವ
ನವರಿಗಿತ್ತನು ತನ್ನ ಪಾಠಕ
ನಿವಹವನು ಕಳುಹಿದನು ಕೌರವ ಬಲದ ಸುಭಟರಿಗೆ
ಅವರು ಬಂದರು ಕರ್ಣ ಗುರು ಸಂ
ಭವ ಸುಶರ್ಮಕ ಶಕುನಿ ಕೃಪ ಕೌ
ರವ ನೃಪಾದಿಗಳಿದಿರಲೊದರಿದರನಿಲಜನ ಮತವ ೧೩

ಮುರಿದು ಲೋಕವ ನುಂಗಿದರೆ ಕ
ಟ್ಟಿರುವೆಯೇ ಕಾಲಂಗೆ ಕತ್ತಲೆ
ಯಿರಿತದಲಿ ಕೈದೀವಿಗೆಯ ಹಂಗೇಕೆ ದಿನಮಣಿಗೆ
ಮರೆದೆಲಾ ರಾಧೇಯ ಕೃಪ ನಿಲು
ಹೊರಗೆ ಗುರುಸುತ ನಿನ್ನ ಗರ್ವವ
ಹೆರಿಸುವವು ಭೀಮಾಸ್ತ್ರವೆಂದುದು ವಂದಿ ಸಂದೋಹ ೧೪

ಆಸೆಯೇ ಜೀವದಲಿ ಕುರುಧರ
ಣೀಶ ಬಿಡು ರಾಜ್ಯವನು ಮಾತಿನ
ವಾಸಿಯೇ ಕೊಡು ಕದನವನು ಸಾಕುಳಿದ ಮಾತೇನು
ಈ ಸುಶರ್ಮಕ ಶಕುನಿ ಸಲೆ ದು
ಶ್ಶಾಸನಾದಿ ಪಿಪೀಲಕರು ತಮ
ಗೇಸು ಬಲುಹುಂಟೈಸನೊದಗಲಿ ಎಂದರವರಂದು ೧೫

ಇವರು ಕಳುಹಿದರುಚಿತದಲಿ ನಿ
ನ್ನವರು ಮುಸಗಿದ ಕಡಲವೊಲು ಬಲು
ದವಕಿಗರು ಕೋಲಳವಿಗೊಂಡರು ಕೋಡ ಕೈಗಳಲಿ
ತವತವಗೆ ದೆಖ್ಖಾಯ ಮಿಗೆಯು
ತ್ಸವದಲುರುಬಿದರವನಿಪಾಲನ
ಗವಿಯ ಘಾಡಿಕೆ ಜೋಡಿಸಿತು ಗೀರ್ವಾಣರಾಲಿಗಳ ೧೬

ಇನ್ನರಿಯಬಹುದೆನುತ ರಾಯನ
ಮನ್ನಣೆಯ ಮದಸೊಕ್ಕಿದಾನೆಗ
ಳಿನ್ನ ಬಿಡು ಬಿಡು ತನ್ನ ಬಿಡು ಬಿಡು ಎನುತ ಖಾತಿಯಲಿ
ತಿನ್ನಡಗನೊಡೆಹೊಯ್ದು ಭೀಮನ
ಬೆನ್ನಲುಗಿ ತನಿಗರುಳನಕಟಾ
ಕುನ್ನಿಗಳಿರೆನುತೊದಗಿದರು ದುಶ್ಶಾಸನಾದಿಗಳು ೧೭

ಈತನೇ ನಮಗರ್ಜುನನು ಕೊ
ಳ್ಳೀತನನು ಹೊಯ್ ಹೊಯ್ಯೆನುತ ಗತ
ಭೀತರಿಟ್ಟಣಿಸಿದರು ಸಮಸಪ್ತಕರು ವಂಗಡಿಸಿ
ಪೂತು ಮಝರೇ ಭೀಮ ಎನುತವೆ
ಸೂತಸುತನೌಕಿದನು ಕೃಪ ಗುರು
ಜಾತ ಕೃತವರ್ಮಾದಿ ರಥಿಕರು ಹೊಕ್ಕರುರವಣಿಸಿ ೧೮

ಒಂದು ದೆಸೆಯಲಿ ರಾಯನಿಪ್ಪ
ತ್ತೊಂದು ಸಾವಿರ ರಥ ಸಹಿತುಘೇ
ಯೆಂದು ಬಿಟ್ಟನು ಭೀಮಸೇನನ ರಥದ ಸಮ್ಮುಖಕೆ
ಅಂದು ಗೋಗ್ರಹಣದಲಿ ಫಲುಗುಣ
ನಿಂದನನಿಬರಿಗರಸ ಚಿತ್ತೈ
ಸಿಂದು ಸೈರಿಸಿ ನಿಂದನನಿಬರಿಗೊಬ್ಬನೇ ಭೀಮ ೧೯

ಕೀರಿ ಕಾಲಿಡೆ ದಿಕ್ಕರಿಗಳೆದೆ
ಡೋರುವೋಗಲು ಸರ್ವ ಲಗ್ಗೆಯ
ಲೇರಿತೀ ದಳ ದಳವುಳಿಸಿ ದಳಪತಿಯ ನೇಮದಲಿ
ಏರು ಸೂರೆಗೆ ಹಾರಿ ಮಿಸಲಿ
ನೇರು ನಮ್ಮದು ತಮ್ಮದೆನುತಂ
ಬ್ಬೇರಿ ಭೀಮನ ಮುತ್ತಿದರು ಮೆತ್ತಿದರು ಸರಳಿನಲಿ ೨೦

ಅರಸ ಕೇಳೈ ನಿಮ್ಮ ಭೀಮನ
ಪರಿಯನೀ ಸರ್ವಾಸ್ತ್ರಘಾತ
ಸ್ಫುರಣ ಮದಕರಿ ಮಕ್ಷಿಕಾ ಸಂಘಾತದಂದದಲಿ
ಕೆರಳಿ ಕವಿದನು ಕೆದರಿದುರಿ ಕ
ರ್ಪುರಕೆ ಕವಿವಂದದಲಿ ಕರ್ಣನ
ಗುರುಸುತನ ಕುರುಪತಿಯ ದುಶ್ಶಾಸನನ ರಥಕಾಗಿ ೨೧

ಎಚ್ಚನವರವರೆಚ್ಚ ಬಾಣವ
ಕೊಚ್ಚಿದನು ಕೋಲಳವಿಗೊಡ್ಡಿದ
ನಿಚ್ಚಟರ ನೀಗಿದನು ತಾಗಿದನರಸು ಮೋಹರವ
ಹೆಚ್ಚಿ ವೀರಾವೇಶದಲಿ ಬಹ
ಬಿಚ್ಚು ರಥಿಕರನಾಯ್ದು ಧೈರ್ಯದ
ಕೆಚ್ಚ ಮುರಿದನು ಕದಡಿದನು ರಿಪುಸುಭಟ ಸಾಗರವ ೨೨

ತುಡುಕುವಾನೆಯನೀಸಿನಲಿ ಖುರ
ವಿಡುವ ಕುದುರೆಯನೊತ್ತಿ ಹಾಯ್ಸುವ
ಬಿಡು ರಥವ ತಲೆವರಿಗೆಯಲಿ ತವಕಿಸುವ ಕಾಲಾಳ
ಕಡಿದನಂಬಿನೊಳಾ ಗಜವನಾ
ಕಡು ಹಯವನಾ ರಥವನಾ ವಂ
ಗಡದ ಕಾಲಾಳುಗಳನೊಂದು ವಿಘಳಿಗೆ ಮಾತ್ರದಲಿ ೨೩

ಮುಂದೆ ಸಬಳಿಗರೆಡ ಬಲದಲೋ
ರಂದದಲಿ ಬಿಲ್ಲಾಳು ದೊರೆಗಳ
ಮುಂದೆ ಹರಿಗೆಗಳೆರಡು ಬಾಹೆಯಲಾನೆ ಕುದುರೆಗಳು
ಸಂದಣಿಸಿದುದು ಮತ್ತೆ ಬೀಳುಂವ
ಮಂದಿಗದು ನೆರವಾಯ್ತು ನೆಗ್ಗಿದ
ನೊಂದು ಹಲಗೆಯಲೇರಿದವರನು ಭೂಪ ಕೇಳೆಂದ ೨೪

ಮುರಿದು ನೆಗ್ಗಿದ ರಥವ ಬರಿಕೈ
ಹರಿದು ಬೀಳುವ ಗಜವ ಘಾಯದ
ನೆರುವಣಿಗೆಯಲಿ ನೆಗ್ಗಿ ಮುಗ್ಗಿದ ಕುದುರೆ ಕಾಲಾಳ
ಅರಿಯೆನಭಿವರ್ಣಿಸಲು ಬಲ ಮು
ಕ್ಕುರಿಕಿಕೊಂಡುದು ಮೇಲೆ ಮೇಲ
ಳ್ಳಿರಿವ ಕಹಳೆಯ ಬಹಳ ಬಹುವಿಧ ವಾದ್ಯರಭಸದಲಿ ೨೫

ಸಿಕ್ಕಿದನು ಹಗೆ ಸ್ವಾಮಿದ್ರೋಹಿಯ
ಸೆಕ್ಕಿ ಸುರಗಿಯೊಳಿವನ ಖಂಡವ
ನಿಕ್ಕುಳಿಸೊಳೊಡೆಯುವಚಿ ಕೊಯ್ ಸುಂಟಿಗೆಯ ತಿನ್ನೆನುತ
ಹೊಕ್ಕು ಹೊಯ್ದರು ರಥವನಳವಿಗೆ
ಮಿಕ್ಕು ಕೈ ಮಾಡಿದರು ಕಾಲ್ದುಳಿ
ಯೊಕ್ಕಲಲಿ ಬೇಸರಿಸಿದರು ಪವಮಾನ ನಂದನನ ೨೬

ನೆಲಕೆ ದೊಪ್ಪನೆ ಹಾಯ್ದು ಕೊಂಡನು
ಹಲಗೆ ಗದೆಯನು ಮೇಲುವಾಯ್ದ
ಪ್ಪಳಿಸಿದರೆ ಕಂಪ್ಪಳಿಸಿತರಿಬಲ ಘಾಯ ಘಾಯದಲಿ
ತಲೆಗಳೊಟ್ಟಿಲ ಕರಿಗಳಟ್ಟೆಯ
ನೆಳೆವ ರಕುತದ ಹೊನಲ ಮುಂಡದ
ಲಳಿಯ ನಾಟ್ಯದಲೆಸೆದುದೈ ಬೀಭತ್ಸ ರೌದ್ರದಲಿ ೨೭

ಕರಿ ಕೆಡೆಯೆ ಕಾಲಿನಲಿ ಜೋದರು
ತೆರಳದೆಚ್ಚಾಡಿದರು ರಥಚಯ
ಮುರಿಯೆ ಕಾಲಿನಲೊದಗಿದರು ಸಮರಥ ಮಹಾರಥರು
ಹರಿಯೆ ಹಯ ರೂಢಿಯಲಿ ನಿಂದ
ಬ್ಬರಿಸಿದರು ರಾವುತರು ಭೀಮನ
ಬಿರುಗದೆಯ ಘಲ್ಲಣೆಗೆ ಚೆಲ್ಲಿತು ನಿಮ್ಮ ಪರಿವಾರ ೨೮

ರಾವುತರು ಕಡಿವಡೆಯೆ ಕಾಂಭೋ
ಜಾವಳಿಗಳೋಡಿದವು ಜೋದರ
ಜೀವ ಜಾಳಿಸೆ ಬೀದಿವರಿದವು ಗಜಘಟಾಳಿಗಳು
ತಾವು ನಿಬ್ಬರ ಗತಿಯ ರಥ ತುರ
ಗಾವಳಿಗಳೆಳೆದವು ರಥಂಗಳ
ನಾ ವಿಗಡ ವಿಗ್ರಹ ಮಹಾದ್ಭುತವರಸ ಕೇಳೆಂದ ೨೯

ಕೆಡೆದ ಝಲ್ಲರಿಗಳ ರಥಾಗ್ರದೊ
ಳುಡಿದ ಸಿಂಧದ ಮಕುಟ ಪದಕದ
ಖಡೆಯ ಸರಪಣಿ ತೋಳಬಂದಿಯ ವಜ್ರಮಾಣಿಕದ
ಕಡುಕು ಹೀರಾವಳಿಯ ಹಾರದ
ಕಡಿಯ ರಚನೆಯ ರಾಶಿ ಯಮುನಂ
ಗಡಿಯ ಪಸರವಿದೆನಲು ಮೆರೆದುದು ಕೂಡೆ ರಣಭೂಮಿ ೩೦

ಕಡಿದ ಹಕ್ಕರಿಕೆಗಳ ಸೀಳಿದ
ದಡಿಯ ನೆಗ್ಗಿದ ಗುಳದ ರೆಂಚೆಯ
ಸಿಡಿದ ಸೀಸಕ ಬಾಹುರಕ್ಷೆಯ ಜೋಡು ಮೊಚ್ಚೆಯದ
ಉಡಿದ ಮಿಣಿ ಮೊಗರಂಬ ಗದ್ದುಗೆ
ಬಡಿಗೆಗಳ ಸೂತ್ರಿಕೆಯ ಕಬ್ಬಿಯ
ಕಡಿಯಣದ ಕುಸುರಿಗಳಲೆಸೆದುದು ಕೂಡೆ ರಣಭೂಮಿ ೩೧

ಮುರಿದ ದೂಹತ್ತಿಗಳ ನೆಗ್ಗಿದ
ಸುರಗಿಗಳ ಚಿನಕಡಿಯ ತೋಮರ
ಪರಶು ಸೆಲ್ಲೆಹ ಚಕ್ರ ಸಬಳ ಮುಸುಂಡಿ ಲೌಡೆಗಳ
ಹರಿದ ಹೊದೆಯಂಬುಡಿದ ಬಿಲ್ಲಿನ
ಬರಿದ ಬತ್ತಳಿಕೆಗಳ ಸೀಳಿದ
ಹರಿಗೆಗಳ ಹೇರಾಳದಲಿ ರಂಜಿಸಿತು ರಣಭೂಮಿ ೩೨

ಉರುಳ್ವ ತಲೆಗಳ ಕುಣಿವ ಮುಂಡದ
ಹೊರಳ್ವ ಕರಿಗಳ ಗದೆಯ ಹೊಯ್ಲಲಿ
ನರಳ್ವ ವೀರರ ಮಿದುಳ ಜೋರಿನ ಜೊಂಡೆ ಜೋಡಣೆಯ
ಅರಳ್ವ ಕಡಿನಾಳಿಕೆಯ ರಕುತಕೆ
ಮರಲ್ವ ಭೂತವ್ರಜದ ರ್ಘೋಂಪಿಸಿ
ಕೆರಳ್ವ ಭಟರಟ್ಟೆಗಳಲೆಸೆದುದು ಕೂಡೆ ರಣಭೂಮಿ ೩೩

ಅಲ್ಲಿ ಕರ್ಣನ ರಥದ ತೇಜಿಯ
ಘಲ್ಲಿಸಿದನಾ ಕ್ಷಣದೊಳಿಚ್ಚೆಯ
ಕೆಲ್ಲೆಯಲಿ ಕಾದಿದನು ಚಿಗಿದನು ಕೌರವನ ಹೊರೆಗೆ
ಅಲ್ಲಿ ಹೊಯ್ದು ಸುಶರ್ಮನವದಿರ
ಚೆಲ್ಲಬಡಿದನು ದಳದ ನಾಯಕ
ರೆಲ್ಲರಿಗೆ ಸವಿದೋರಿದನು ಬಲುಗದೆಯ ಹೊಯ್ಲುಗಳ ೩೪

ಇತ್ತಲಿತ್ತಲು ಭೀಮನೆಂದುರೆ
ಮುತ್ತಿ ಮುಸುಕಿತು ಸೇನೆ ಚಿಮ್ಮಿದ
ನತ್ತಲಾಚೆಯಲಲ್ಲಿ ದಳ ಘಾಡಿಸಿತು ವೇಢೆಯಲಿ
ಇತ್ತ ಹಾಯ್ದನು ಕೌರವನ ರಥದ
ದತ್ತ ಚಿಗಿದನು ಗುರುಸುತಾದಿಗ
ಳತ್ತಲಲ್ಲಿಗೆ ಮೊಳಗಿದನು ಮೋದಿದನು ಪಟುಭಟರ ೩೫

ಕರಿಘಟೆಯ ಮರೆವೊಕ್ಕು ನಿಂದರು
ನರರು ತೇಜಿಗಳೋಡಿ ತೇರಿನ
ಮರೆಯ ಸಾರ್ದವು ತೇರು ಹಾಯ್ದವು ದೊರೆಯ ಹಿನ್ನೆಲೆಗೆ
ಕರಿಮುರಿದು ಕಾಲಾಳು ಕಾಲಾ
ಳ್ತಿರಳಿ ದೊರೆಗಳ ಹಿಂದೆ ದೊರೆ ಪೈ
ಸರಿಸಿತಲ್ಲಿಯದಲ್ಲಿ ಭೀಮನ ಹೊಯ್ಲ ಹೋರಟೆಗೆ ೩೬

ಪೂತು ಮಝು ರಿಪುರಾಯ ಮನ್ಮಥ
ಭೂತನಾಥ ವಿರೋಧಿಬಲ ಪುರು
ಹೂತ ರಾಯಘರಟ್ಟ ವೈರಿನಿಕಾಯ ಗಿರಿವಜ್ರ
ಏತಕೀ ಸೂಳೆಯರು ಕ್ಷತ್ರಿಯ
ಜಾತಿಯಲಿ ಜನಿಸಿದರು ಶಿವಶಿವ
ಪೂತು ಗಂಡಿಗನೆಂದು ಗರ್ಜಿಸಿತಖಿಳ ವಂದಿಜನ ೩೭

ಹದಿನಾರನೆಯ ಸಂಧಿ

ಸೂ. ರಾಯರಿಪುಭಟಗಿರಿ ನಿವಹ ವ
ಜ್ರಾಯುಧನು ಕಲಿ ಪಾರ್ಥನಂಭೋ
ಜಾಯತಾಂಬಕ ಸಹಿತ ಕಂಡನು ಧರ್ಮನಂದನನ

ಕೇಳು ಧೃತರಾಷ್ಟ್ರಾವನಿಪ ಬಲು
ಗಾಳಿಗವ ಭೀಮಂಗೆ ಸೇರಿಸಿ
ಪಾಳೆಯಕೆ ತಿರುಗಿದರು ಕೃಷ್ಣಾರ್ಜುನರು ದುಗುಡದಲಿ
ಹೇಳು ಮುರಹರ ಬುದ್ಧಿ ಕದಡಿ ಭ
ಡಾಳಿಸಿತು ಪರಿಭೇದವೊಸಗೆಯ
ಕೇಳಲರಿಯೆನು ರಾಜವಾರ್ತೆಯನೆಂದನಾ ಪಾರ್ಥ ೧

ನೋಡುವೆವು ನಡೆ ಧರ್ಮಪುತ್ರನ
ಕೇಡು ಕಲಿಯುಗ ಬೀಜವೀ ಪರಿ
ಕೂಡದೀ ಹೊತ್ತಿನಲಿ ಧರ್ಮಸ್ಥಿತಿಗೆ ಲಯವಿಲ್ಲ
ಖೇಡನಾಗದಿರಿದಕೆ ಚಿಂತಿಸ
ಬೇಡೆನುತ ಫಲುಗುಣನ ಚಿತ್ತದ
ಪಾಡರಿದು ನುಡಿವುತ್ತ ತಂದನು ಪಾಳೆಯಕೆ ರಥವ ೨

ಬರಲು ಪಾರ್ಥನ ಕಂಡು ಪುರಜನ
ಹರೆದುದಲ್ಲಿಯದಲ್ಲಿ ದುಗುಡದ
ಭರದ ಗುಜುಗುಜು ಗೋಷ್ಠಿಗಳ ಜನಜನದ ಮುಸುಕುಗಳ
ಮುರಿದ ನೀಹಾರದ ವಿಹಾರದ
ಸರಸಿರುಹವನದಂತೆ ಪಾಳೆಯ
ದಿರವು ಲೇಸಲ್ಲೆನುತ ಬಂದನು ರಾಜಮಂದಿರಕೆ ೩

ಕಳಚಿದನು ಸೀಸಕವ ಬೆಂಬ
ತ್ತಳಿಕೆಯನು ವಜ್ರಾಂಗಿ ಮೊಚ್ಚೆಯ
ಬಿಲು ಸರಳನಿಳುಹಿದನು ರಥದಲಿ ದೈತ್ಯರಿಪು ಸಹಿತ
ಇಳಿದು ರಥವನು ರಣದ ಭಾರಿಯ
ಬಳಲಿಕೆಯ ಕೈಕೊಳ್ಳದರಸನ
ನಿಳಯವನು ಹೊಕ್ಕನು ಧನಂಜಯ ಕಂಡನವನಿಪನ ೪

ರ್ಘೊಂಪಿಸುವ ಸಿರಿಮೊಗದ ನೋಟದ
ಸೊಂಪಡಗಿದಾಲಿಗಳ ಧೈರ್ಯದ
ಗುಂಪಳಿದ ನಿಜ ರಾಜತೇಜದ ವಿಪುಳ ವೇದನೆಯ
ಬಿಂಪಗಿವ ಬೇಸರಿನ ತುರುಗಿದ
ತಂಪಿನಗ್ಗಳಿಕೆಯ ವಿಘಾತಿಯ
ರ್ಘೊಂಪಿನಲಿ ಹುದುಗಿದ ಮಹೀಶನ ಕಂಡನಾ ಪಾರ್ಥ ೫

ಬಿಗಿದು ಕಟ್ಟಿದ ಘಾಯ ಮದ್ದಿನ
ಜಿಗಿಯ ತೈಲದ ತಳಿತ ಲೇಪದ
ಲುಗಿದ ಬಾಣವ್ಯಥೆಯ ಕರ್ಣಧ್ಯಾನಚೇತನದ
ಸೊಗಸು ಮಿಗೆ ದ್ರೌಪದಿಯ ತುದಿವೆರ
ಳುಗುರುವೆರಸಿದ ಸಿರಿಮುಡಿಯ ಬಲು
ದುಗುಡ ಭರದಲಿ ಕುಸಿದ ಭೂಪನ ಕಂಡನಾ ಪಾರ್ಥ ೬

ನಕುಳ ಧೃಷ್ಟದ್ಯುಮ್ನ ಸಹದೇ
ವಕ ಯುಧಾಮನ್ಯುಕನು ಸುತಸೋ
ಮಕ ಶತಾನೀಕ ಪ್ರಬುದ್ಧಕ ಚೇಕಿತಾನಕರು
ಸಕಲ ಕೈಕೆಯ ಮತ್ಸ್ಯಸುತ ಸಾ
ತ್ಯಕಿ ಯುಯುತ್ಸು ಶಿಖಂಡಿ ಪ್ರತಿವಿಂ
ಧ್ಯಕರು ಪಾರ್ಥನನುಪಚರಿಸಿ ಕುಳ್ಳಿರ್ದರಲ್ಲಲ್ಲಿ ೭

ಕರಗಿತಂತಃಕರಣವಾಲಿಗ
ಳೊರತೆಯೆನೆ ಕಣ್ಣಾಲಿಯಲಿ ಕಾ
ತರಿಸಿದವು ಜಲಬಿಂದುಗಳು ಪುರುಹೂತ ನಂದನನ
ಅರಸನಿರವಿದೆಯೆನುತ ನೊಸಲನು
ಚರಣದಲಿ ಚಾಚಿದನು ಚೇಷ್ಟಾ
ಪರಿಗತಿಯನಾರೈವುತಭಿಮುಖನಾಗಿ ಕುಳ್ಳಿರ್ದ ೮

ನೊಂದೆಲಾ ನರನಾಥ ವಿಧಿಯೇ
ನೆಂದು ಮುನಿದುದೊ ನಿನಗೆನುತ್ತ ಮು
ಕುಂದನತಿ ಕಾರುಣ್ಯ ದೃಷ್ಟಿಯಲವನಿಪನ ನೋಡಿ
ಮಂದಮಂದದಿ ಪಾಣಿ ಪಲ್ಲವ
ದಿಂದ ತಡವಿದನೇರನಾಗಳೆ
ಕಂದೆರೆದು ನೋಡಿದನು ಭೂಪತಿ ಕೃಷ್ಣ ಫಲುಗುಣರ ೯

ಹರಿ ಕರಾಬ್ಜಸ್ಪರ್ಶ ಮಾತ್ರ
ಸ್ಫುರಣದಿಂದಾಪ್ಯಾಯಿತಾಂತಃ
ಕರಣನಾದನು ನನೆದನುದ್ಗತ ಬಾಷ್ಪವಾರಿಯಲಿ
ಮುರಿಯಂದೇರಿನ ಮೈವಳಿಗೆ ಲಘು
ತರದ ಲುಳಿಯಲಿ ಮೈಯ ಬಲಿದಾ
ದರಿಸಿ ಕುಳ್ಳಿರ್ದನು ಮಹೀಪತಿ ಮಾನಿನಿಯ ಮಲಗಿ ೧೦

ಹದುಳವೇ ಪಾರ್ಥಂಗೆ ಹೇರಾ
ಳದಲಿ ಕಾದಿದನಾ ಸುಶರ್ಮನ
ಕದನ ಬೆಟ್ಟಿತು ಶಪಥವಲ್ಲಾ ತಮ್ಮೊಳನಿಬರಿಗೆ
ಕೆದರಿದನು ಕೊಲ್ಲಣಿಗೆಯಲಿ ಬಂ
ದೊದಗಿ ನೀವವದಿರಲಿ ಸುಯ್ಧಾ
ನದಲಿ ಬಂದುದೇ ಲಕ್ಷವೆಂದನು ನೃಪತಿ ಕೃಷ್ಣಂಗೆ ೧೧

ಆಯಿತಿದು ನೀ ಬಂದ ಪರಿ ರಿಪು
ರಾಯ ಥಟ್ಟಿನೊಳೊಕ್ಕಲಿಕ್ಕಿದ
ದಾಯವೊಳ್ಳಿತು ದಿಟ್ಟನಾವನು ನಿನ್ನ ಹೋಲಿಸಲು
ಕಾಯಿದರಿ ಕಳುಹಿದನೊ ಮೇಣಡ
ಹಾಯಿದನೊ ಕರ್ಣಂಗೆ ಮಾಡಿದು
ಪಾಯವಾವುದು ಪಾರ್ಥ ಹೇಳೆಂದವನಿಪತಿ ನುಡಿದ ೧೨

ಬೇರೆ ಸಮಸಪ್ತಕರೊಳೆಕ್ಕಟಿ
ತೋರಿಸಿದೆ ನೀ ತೊಂಡಿನೋಲೆಯ
ಕಾರತನವನು ಸೂತಸಂತನಿಲ್ಲವರ ಥಟ್ಟಿನಲಿ
ಹಾರಲೂದಿ ಸುಶರ್ಮನವದಿರ
ಸೂರಿ ತಿರುಗಿದ ಬಳಿಕ ಕೈ ಮೈ
ತೋರಿದನೆ ಕಲಿಕರ್ಣ ನಿನ್ನೊಡನೆಂದನಾ ಭೂಪ ೧೩

ಎಲೆ ಧನಂಜಯ ಸೂತತನಯನ
ಗೆಲಿದು ಬಂದೆಯೊ ದಿವಿಜ ನಗರಿಗೆ
ಕಳುಹಿ ಬಂದೆಯೊ ಕಂಡು ಕೆಣಕದೆ ಬಂದೆಯೋ ಮೇಣು
ಉಳುಹಿ ಬಿಡುವನೆ ಸಮರ ಮುಖದಲಿ
ಮಲೆತನಾದರೆ ಕರ್ಣನೇನ
ಗ್ಗಳಿಕೆವಡೆದನೊ ಶಿವಶಿವಾ ಎಂದರಸ ಬಿಸುಸುಯ್ದ ೧೪

ಜೀಯ ಖಾತಿಯಿದೇಕೆ ಕರ್ಣನ
ಕಾಯಿದುಳುಹಿದೆನೊಂದು ಬಾರಿ ವಿ
ಘಾಯದಲಿ ಘಟ್ಟಿಸುವೆನೀಗಳೆ ಹಾಯ್ಕು ವೀಳೆಯವ
ರಾಯದಳಗಳವೆನ್ನ ಕೂಡೆ ನ
ವಾಯಿಯೇ ಕಲಿ ಕರ್ಣನಾಯುಷ
ಹೋಯಿತಿದೆಯೆಂದೊರಸಿದನು ವಾಮಾಂಘ್ರಿಯಲಿ ನೆಲನ ೧೫

ಈಸು ಪರಿಯಲಿ ನಿಮ್ಮ ಚಿತ್ತದೊ
ಳಾಸರಾಯಿತೆ ನಮ್ಮ ದುಷ್ಕೃತ
ವಾಸನಾ ಫಲವೈಸಲೇ ತಾನಿದ್ದು ಫಲವೇನು
ಆ ಸುಯೋಧನ ವಿಗಡ ಭಟ ವಾ
ರಾಸಿಯನು ಮುಕ್ಕಳಿಸುವೆನು ಧರ
ಣೀಶ ನಿಮ್ಮಡಿಯಾಣೆ ನೇಮವ ಕೊಂಡೆ ನಾನೆಂದ ೧೬

ನಾಲಗೆಯ ನೆಣಗೊಬ್ಬು ಮಿಕ್ಕು ಥ
ಢಾಳಿಸಿದರೇನಹುದು ಕರ್ಣನ
ಕೋಲಗರಿ ಸೋಂಕಿದರೆ ಸೀಯದೆ ಸಿತಗತನ ನಿನಗೆ
ವೀಳೆಯವ ತಾ ಕರ್ಣನಾಯುಷ
ಕೋಳುವೋಯಿತ್ತೆಂಬ ಗರ್ವನ
ಗಾಳುತನವನು ನಂಬಲರಿವೆನೆ ಪಾರ್ಥ ಹೇಳೆಂದ ೧೭

ನಿನಗೆ ಮಣಿವವನಲ್ಲ ರಾಧಾ
ತನಯನವ ಹೆಚ್ಚಾಳು ಕಡ್ಡಿಯ
ಮೊನೆಗೆ ಕೊಂಬನೆ ನಿನ್ನನೀ ಹೆಮ್ಮಕ್ಕಳಿದಿರಿನಲಿ
ಕನಲಿ ಕಳವಳಿಸಿದರೆ ನೀನಾ
ತನ ವಿಭಾಡಿಸಲಾಪ ಸತ್ವದ
ಮನವ ಬಲ್ಲೆನು ಪಾರ್ಥ ನುಡಿಯದಿರೆಂದನಾ ಭೂಪ ೧೮

ಬಲನ ಜಂಭನ ಕೈಟಭನ ದಶ
ಗಳನ ನಮುಚಿಯ ಕಾಲನೇಮಿಯ
ಬಲ ನಿಶುಂಭ ಹಿರಣ್ಯಕಾದಿಯ ಖಳರ ಸಂದೋಹ
ಅಳವಿಗೊಡುವರೆ ಪಾಡಹುದು ನೀ
ನಿಲುಕಲಳವೇ ಕರ್ಣಜಯವತಿ
ಸುಲಭವೇ ನಿನ್ನಂದದವರಿಗೆ ಪಾರ್ಥ ಹೇಳೆಂದ ೧೯

ಜಾಣತನದಲಿ ಕಾದಿ ಹಿಂಗುವ
ದ್ರೋಣನಲ್ಲಳವಿಯಲಿ ಕಳವಿನ
ಕೇಣದಲಿ ಕೊಂಡಾಡುವರೆ ಗಾಂಗೇಯನಿವನಲ್ಲ
ಸಾಣೆಗಂಡಲಗಿವನು ಸಮರಕೆ
ಹೂಣಿಗನು ರಿಪುಬಲದ ಹಾಣಾ
ಹಾಣಿಕಾರನು ಕರ್ಣನಳುಕುವನಲ್ಲ ನಿನಗೆಂದ ೨೦

ಜಾಳ ಜರೆದು ಜಡಾತ್ಮರಿಗೆ ಜಂ
ಘಾಳತನವನು ಮೆರೆದು ಖೋಡಿಯ
ಖೂಳರನು ಖೊಪ್ಪರಿಸಿ ಚೂಣಿಯ ಚರರ ಚಪ್ಪರಿಸಿ
ಆಳುತನದಲಿ ಬೆರೆವ ನಿನಗವ
ಸೋಲಲರಿಯನು ನಿನ್ನ ಗಂಟಲ
ಗಾಳ ನಿನಗಳುಕುವನೆ ಕರ್ಣನು ಪಾರ್ಥ ಹೇಳೆಂದ ೨೧

ಏನ ಹೇಳುವೆನೆನ್ನ ದಳದಲಿ
ತಾನು ಭೀಮನ ಥಟ್ಟಿನಲಿ ಬಳಿ
ಕೀ ನಕುಲ ಸಹದೇವ ಸಾತ್ಯಕಿ ದ್ರುಪದರೊಡ್ಡಿನಲಿ
ಮಾನನಿಧಿ ರಾಧೇಯನತ್ತಲು
ತಾನೆ ತನುಮಯವಾಯ್ತು ಪಾಂಡವ
ಸೇನೆ ಬಡ ಸಾಹಸಿಕರೆಣೆಯೇ ಸೂತತನಯಂಗೆ ೨೨

ಎಲ್ಲಿ ಕರ್ಣನು ತಿರುಗಿ ನೋಡಿದ
ಡಲ್ಲಿ ತಾನೆಡವಂಕ ಬಲ ಮುಖ
ದಲ್ಲಿ ಸೂತಜನೆಂತು ದೆಸೆಗಳ ನೋಡೆ ಕರ್ಣಮಯ
ಎಲ್ಲಿ ನೋಡಿದಡಲ್ಲಿ ಕರ್ಣನ
ಬಿಲ್ಲ ಬೊಬ್ಬೆ ರಥಾಶ್ವರವವೆದೆ
ದಲ್ಲಣದ ದೆಖ್ಖಾಳ ರಚನಾ ರಸಿಕನವನೆಂದ ೨೩

ಮುರಿದು ಹರಿಹಂಚಾದ ನಿಜ ಮೋ
ಹರವ ನೆರೆ ಸಂತೈಸಿ ಜೋಡಿಸಿ
ಜರೆದು ಗರಿಗಟ್ಟಿದ ವಿರೋಧಿ ವ್ರಜದ ಥಟ್ಟಣೆಯ
ಮುರಿದು ಕುರಿದರಿ ಮಾಡಿ ದೊರೆಗಳ
ನರಸಿ ಕಾದಿ ವಿಭಾಡಿಸುವ ರಣ
ದುರುಬೆಕಾರನನೆಂತು ಸೈರಿಸಿ ಗೆಲುವೆ ನೀನೆಂದ ೨೪

ಕಾದಿ ನೊಂದೆನು ತಾನು ಬಳಿಕ ವೃ
ಕೋದರನೆಯಂಡಹಾಯ್ದನಾತನ
ಕಾದಿ ನಿಲಿಸಿ ಮದೀಯ ರಥವನು ಮತ್ತೆ ಕೆಣಕಿದನು
ಮೂದಲಿಸಿ ಸಹದೇವ ನಕುಲರು
ಕಾದಲಿವದಿರ ಮುರಿದನಗ್ಗದ
ಕೈದುಕಾರರ ದೇವ ಕರ್ಣನ ಗೆಲುವರಾರೆಂದ ೨೫

ಮಲೆತು ಧಾಳಾಧೂಳಿಯಲಿ ಬಲ
ಸುಳಿ ಮುಸಗಿಯೆನ್ನೊಬ್ಬನನು ಮೈ
ಬಳಸಿ ಕಾದಿತು ವೀರ ಕರ್ಣನ ಕೂಡೆ ತಲೆಯೊತ್ತಿ
ಒಲವರವು ನಿನಗುಳ್ಳರಾಗಳೆ
ನಿಲಿಸಿದಾ ನೀ ಬಂದು ಬಯಲ
ಗ್ಗಳಿಕೆಯನೆ ಬಿಡೆ ಕೆದರುತಿಹೆ ಮಾಣೆಂದು ನೃಪ ನುಡಿದ ೨೬

ಉಕ್ಕಿದುದು ತನಿ ವೀರರಸ ಕುದಿ
ದುಕ್ಕಿ ಹರಿದುದು ರೌದ್ರರಸವವ
ರಕ್ಕಜವ ನಭಕೊತ್ತಿ ಪರಿದುದು ಶಾಂತಿರಸಲಹರಿ
ಮಿಕ್ಕು ಬಹಳ ಕ್ರೋಧವೊಡಲೊಳ
ಗುಕ್ಕಿತಮಳೋತ್ಸಾಹ ಚಾಪಳ
ಸುಕ್ಕಿತೊಂದೇ ನಿಮಿಷ ಮೋನದೊಳಿರ್ದನಾ ಪಾರ್ಥ ೨೭

ಹೇಳಲಂಜುವೆನಾ ಸುಶರ್ಮಕ
ನಾಳು ತಾಯಿಗೆ ಮಕ್ಕಳಾಗದೆ
ಬೀಳಹೊಯ್ದು ನಿಹಾರದಲಿ ತಿರುಗಿದೆನು ಹರಿಸಹಿತ
ಕೋಲಗುರುವಿನ ಮಗನಲೇ ಹರಿ
ಧಾಳಿ ಹರಿದಡಿಗಟ್ಟಿ ತಡೆದನು
ಹೇಳಿ ಫಲವಿನ್ನೇನುನುತ ಬಿಸುಸುಯ್ದನಾ ಪಾರ್ಥ ೨೮

ಇಟ್ಟಣಿಸಿಕೊಂಡೆನ್ನೊಡನೆ ಸರಿ
ಗಟ್ಟಿ ಕಾದಿದ ರವಿಸುತನ ಹುಡಿ
ಗುಟ್ಟಿದೆನು ರಥವಾಜಿ ಸೂತ ಶರಾಸನಾದಿಗಳ
ಮುಟ್ಟೆ ಬಂದನು ಖಡುಗದಲಿ ಮೈ
ಮುಟ್ಟೆ ಹೆಣಗಿದೆನಾಕ್ಷಣಕೆ ಸಾ
ಲಿಟ್ಟು ಸರಿದುದು ಸಕಲ ಕೌರವ ಸೇನೆ ಸರಿಸದಲಿ ೨೯

ತೊಡಕಿದನು ಗಡ ಗರುಡ ಹಾವಿನ
ತಡಿಕೆವಲೆಯಲಿ ನಿನ್ನ ಗಮನವ
ತಡೆದರೈ ತಪ್ಪೇನು ಕೌರವ ದಳದ ನಾಯಕರು
ಕಡುಹಿನಲಿ ತಡವಾದುದುಳಿದಂ
ತೆಡೆಯಲುಳಿವರ್ಜುನನೆ ನಮ್ಮವ
ಗಡವ ಕೇಳಿದು ನಿಲ್ಲನೆಂದನು ನಗುತ ಯಮಸೂನು ೩೦

ಏನನೆಂಬೆನು ನಮ್ಮ ಪುಣ್ಯದ
ಹಾನಿ ತಲೆದೋರಿದರೆ ಭೀಮನ
ಸೂನುವಿರಲಭಿಮನ್ಯುವಿರಲೆವಗೀ ವಿಪತ್ತಹುದೆ
ಆ ನದೀಜ ದ್ರೋಣರಲಿ ತಾ
ಹಾನಿಯನು ಮಿಗೆ ಕಂಡೆನೇ ನೆರೆ
ಹೀನನನು ಕಂಡಾದಡೆಯು ಬದುಕುವುದು ಲೇಸೆಂದ ೩೧

ಅರಳಿಚದೆ ಮಧುಮಾಸ ಮಾಣಲಿ
ವರುಷ ಋತುವೇ ಸಾಕು ಜಾತಿಗೆ
ಜರಡರೆಮಗಿನ್ನೇನು ಪೂರ್ವಪ್ರಕೃತಿ ವನವಾಸ
ಸಿರಿಗೆ ಕಕ್ಕುಲಿತೆಯೆ ವಿಪಕ್ಷವ
ಬೆರಸಿ ಬದುಕುವೆವೈಸಲೇ ವರ
ಗುರುವಲಾ ಧೃತರಾಷ್ಟ್ರನೂಣೆಯವೇನು ಹೇಳೆಂದ ೩೨

ಬರಿದೆ ಬಯಸಿದಡಹುದೆ ರಾಜ್ಯದ
ಹೊರಿಗೆಯನು ನಿಶ್ಶಂಕೆಯಲಿ ಹೊ
ಕ್ಕಿರಿದು ಬಹ ಸತ್ವಾತಿಶಯ ಬೇಹುದು ರಣಾಗ್ರದಲಿ
ಇರಿದು ಮೇಣ್ ರಿಪುರಾಯರನು ಕು
ಕ್ಕುರಿಸುವರೆ ರಾಧೇಯನಂತಿರ
ಲುರುವನೊಬ್ಬನೆ ಬೇಹುದಲ್ಲದಡಿಲ್ಲ ಜಯವೆಂದ ೩೩

ಎಮಗೆ ವಿಕ್ರಮವೆಂಬಡೀ ರೌ
ರವವ ಕಂಡೆನು ಕರ್ಣನಂತಿರ
ಲೆಮಗೆ ಧೀವಸಿಯಾಗಿ ಕಾದುವರೆಂಬರವರಿಲ್ಲ
ಬವರ ಗೆಲುವರೆ ಹರಿಗೆ ಕೊಡು ಗಾಂ
ಡಿವವ ಸಾರಥಿಯಾಗು ನೀನೆಂ
ದವಗಡಿಸಿದನು ವೀರ ನಾರಾಯಣನ ಮೈದುನನ ೩೪

ಹದಿನೇಳನೆಯ ಸಂಧಿ

ಸೂ. ರಾಯನನು ಕೆಡೆನುಡಿದನಾ ವ
ಜ್ರಾಯುಧನ ನಂದನನು ಬಳಿಕಬು
ಜಾಯತಾಂಬಕ ಸಂತವಿಟ್ಟನು ಧರ್ಮಜಾರ್ಜುನರ

ಕೇಳು ಧೃತರಾಷ್ಟ್ರಾವನಿಪ ಭೂ
ಪಾಲನಾಡಿದ ನುಡಿಯನಾಲಿಸಿ
ಕೇಳಿದನು ಕೆದರಿದನು ಜಡಿದವು ರೋಮರಾಜಿಗಳು
ಮೇಲು ಮೇಲುಬ್ಬೇಳ್ವ ರೋಷ
ಜ್ವಾಲೆ ಹೊದಸಿತು ವದನವನು ಕ
ಣ್ಣಾಲಿ ಕಾಹೇರಿದವು ಪಾರ್ಥಂಗೊಂದು ನಿಮಿಷದಲಿ ೧

ಆಯುಧವ ಹಿಡಿದೊರೆಯನುಗಿದನ
ಡಾಯುಧವ ಝಳಪಿಸುತ ರೌದ್ರ
ಸ್ಥಾಯಿಭಾವದ ಭಾರದಲಿ ಭುಲ್ಲಯಿಸಿ ಭಯವಡಗಿ
ರಾಯನಲ್ಲಿಗೆ ಮೆಲ್ಲ ಮೆಲ್ಲನು
ಪಾಯಗತಿ ಪಲ್ಲವಿಸಲುಪ್ಪರ
ಘಾಯದಲಿ ಲಾಗಿಸುವ ಪಾರ್ಥನ ಕಂಡುದಖಿಳಜನ ೨

ಅಹಹ ಕೈತಪ್ಪಾಯ್ತು ಹಾ ಹಾ
ರಹವಿದೇನೆನುತ ರಾಯನ
ಮಹಿಳೆ ಬಿದ್ದಳು ಮೇಲುಖಡ್ಗಕೆ ತನ್ನ ನಡೆಯೊಡ್ಡಿ
ಬಹಳ ಶೋಕದಲಖಿಳ ಜನವು
ಮ್ಮಹವ ಬಿಸುಟರು ದೈವಗತಿ ದು
ಸ್ಸಹವಲಾ ಎನುತಸುರರಿಪು ಹಿಡಿದನು ಧನಂಜಯನ ೩

ಹಿಡಿಯದಿರು ಮುರವೈರಿ ಪಾರ್ಥನ
ಬಿಡುಬಿಡೀತನ ಖಡ್ಗಕಿದೆಯೆ
ನ್ನೊಡಲು ತನ್ನನೆ ಧಾರೆಯೆರೆದೆನು ನಯನವಾರಿಯಲಿ
ತೊಡಗಿದೀತನ ರಾಜಕಾರ್ಯವ
ಕೆಡಿಸದಿರು ನಿರ್ವಾಹಿಸಲಿ ನೀ
ಬಿಡು ಬಿಡೆನೆ ಜರೆದನು ಮುರಾಂತಕನಿಂದ್ರನಂದನನ ೪

ಅಕಟ ಗುರುಹತ್ಯಾ ಮಹಾ ಪಾ
ತಕಕೆ ತಂದ್ಯೆ ಮನವ ಭರತ
ಪ್ರಕಟಕುಲ ನಿರ್ಮೂಲಕನೆ ನೀನೊಬ್ಬನುದಿಸಿದಲ
ವಿಕಳ ಕುರುನೃಪರೊಳಗೆ ದುರಿತಾ
ತ್ಮಕರ ಕಾಣೆನು ನಿನ್ನ ಸರಿ ಹೋ
ಲಿಕೆಗೆ ಹರಹರದೇನ ನೆನೆದನೆನುತ್ತ ಗರ್ಜಿಸಿದ ೫

ಧರಣಿಪನ ಕೊಲಲೆಂದೊ ಮೇಣೀ
ತರುಣಿಯರಿಗೋ ನಕುಲ ಸಹದೇ
ವರಿಗೆಯೋ ಮೇಣೆನಗೆಯೋ ನೀನುಗಿದಡಾಯುಧದ
ಪರಿಯ ಹೇಳೈ ಪಾರ್ಥ ಮೋನದೊ
ಳಿರದಿರೆನ್ನಾಣೆನಲು ಬೆರಗಿನ
ಗರದ ಗಾಹಿನಲದ್ದು ಮೋನದೊಳಿದ್ದನಾ ಪಾರ್ಥ ೬

ಬೆದರಿಸದಿರ್ಕೈ ಕೃಷ್ಣ ದುಷ್ಕ
ರ್ಮದಲಿ ಸುಳಿಯೆನು ಭೂಪತಿಯ ಗ
ದ್ಗದ ವಚೋವಿನ್ಯಾಸವನ್ಯಾಯ ಪ್ರಪಂಚವಿದು
ಅದರಿನೀತನ ಪೊಯ್ದು ಕೊಂದ
ಲ್ಲದೆ ಸುನಿಷ್ಕೃತಿಯಿಲ್ಲ ಸತ್ಯಾ
ಭ್ಯುದಯವೇ ತನ್ನುದಯವದರಳಿವೆನ್ನ ಲಯವೆಂದ ೭

ದೇವ ಪೂರ್ವದಲೆನ್ನ ನುಡಿ ಗಾಂ
ಡೀವವೇತಕೆ ನಿನಗೆ ನಿನಗೀ
ದೇವಧನು ಸಾದೃಶ್ಯವೇ ತೆಗೆಯೆಂದು ರೋಷದಲಿ
ಆವನೊಬ್ಬನ ನುಡಿದನಾತನ
ಜೀವನವ ಜಕ್ಕುಲಿಸಿಯೆನ್ನ ವ
ಚೋವಿಳಾಸವ ಕಾಯ್ವೆನೆಂದೆನು ಕೃಷ್ಣ ಕೇಳೆಂದ ೮

ಸಾರು ತೆಗೆ ಗಾಂಡಿವವ ನಿನಗನು
ಸಾರಿಯೇ ಬಿಸುಡೆಂದು ನುಡಿಯನೆ
ಧಾರುಣೀಪತಿ ಕೇಳಿರೇ ನೀವಿನಿಬರೀ ನುಡಿಯ
ಆರದನ್ಯಾಯವು ವಿಚಾರ ವಿ
ಶಾರದನು ನೀನೆಲೆ ಮುಕುಂದ ವಿ
ಕಾರಿಯೇ ತಾನೆಂದು ಬಿನ್ನಹ ಮಾಡಿದನು ಪಾರ್ಥ ೯

ಲೇಸು ಲೇಸಿದು ತಮ್ಮನಾಡಿದ
ಭಾಷೆ ಬಾಹಿರವಾಗಬೇಡ ವಿ
ನಾಶಕಾನಂಜೆನು ಮುರಾಂತಕ ಬಿಡು ಧನಂಜಯನ
ಆಸೆಯೆನಗೀ ರಾಜ್ಯದಲಿ ಮೇ
ಣೀ ಶರೀರದಲಿಲ್ಲ ಪಾರ್ಥನ
ಭಾಷೆ ನಿಂದರೆ ಸಾಕು ನೀ ಸಾರೆಂದನಾ ಭೂಪ ೧೦

ಮರುಳೆ ಮೋನದೊಳಿರು ಯುಧಿಷ್ಠಿರ
ನರನ ನೀ ಮುಂದಿಟ್ಟು ಯಮದೂ
ತರಿಗೆ ಕೈವರ್ತಿಸುವ ಪರಿಯೇ ಕೋಟಿ ನರಕದಲಿ
ಹುರುಳನರಿಯದೆ ಧರ್ಮಶಾಸ್ತ್ರದ
ಪರಮ ತತ್ವ ವದಾವ ಮುಖವೆಂ
ದರಿಯೆ ವಿಷಮ ಕ್ಷತ್ರತಾಮಸ ನಿನ್ನ ಬಿಡದೆಂದ ೧೧

ಎಲೆ ಧನಂಜಯ ಧರ್ಮಪುತ್ರನ
ಕೊಲುವೆನುಳುಹುವದಿಲ್ಲವೆಂಬ
ಗ್ಗಳಿಕೆಯಿದು ನಗೆಯಲ್ಲವೇ ನಿಶ್ಚಯವೆ ಹಿಂಸೆಯಲಿ
ಕಲುಮನವಲಾ ನಿನಗಕಟ ನಿ
ರ್ಮಳದ ಧರ್ಮಸ್ಥಿತಿ ರಹಸ್ಯವ
ತಿಳುಪಿದವರಾರೆನುತ ತಲೆದೂಗಿದನು ಮುರವೈರಿ ೧೨

ನುಡಿದ ಮಾತ್ರದಲಿರದು ಧರ್ಮದ
ಬೆಡಗು ತಾನದು ಬೇರೆ ಸತ್ಯವ
ನುಡಿದು ಕೆಟ್ಟವರುಂಟು ಹಿಂಸಾಧರ್ಮವೃತ್ತಿಯಲಿ
ನಡೆದು ಯಾವಜ್ಜೀವದಲಿ ಗತಿ
ವಡೆದರುಂಟೆಲೆ ಪಾರ್ಥ ನಿನ್ನು
ಗ್ಗಡದ ವೀರಾವೇಶ ಮಾಣಲಿ ಮಾತ ಕೇಳೆಂದ ೧೩

ವನದೊಳೊಬ್ಬನು ಕೌಶಿಕಾಹ್ವಯ
ಮುನಿ ತಪಶ್ಚರಿಯದಲಿ ಸತ್ಯವೆ
ತನಗೆ ಸುವ್ರತವೆಂದು ಬಟ್ಟೆಯೊಳಿದ್ದನೊಂದು ದಿನ
ವನಚರರು ಬೇಹಿನಲಿ ಭೂಸುರ
ಜನವ ಬೆಂಬತ್ತಿದರು ಕೌಶಿಕ
ಮುನಿಯ ಬೆಸಗೊಂಡರು ಮಹೀಸುರ ಮಾರ್ಗಸಂಗತಿಯ ೧೪

ವಿತತ ಸತ್ಯದ ವಿಷಯಭೇದ
ಸ್ಥಿತಿಯನರಿಯದ ಮುನಿಪ ವನಚರ
ತತಿಗೆ ಭೂಸುರಜನದ ಮಾರ್ಗವನರುಹಿದನು ಬಳಿಕ
ಅತಿ ದುರಾತ್ಮಕರವದಿರನಿಬರು
ಕ್ಷಿತಿಸುರರ ಕೊಂದಮಳ ಭೂಷ
ಪ್ರತತಿಯನು ಕೊಂಡೊಯ್ದರೆಲೆ ಕೌಂತೇಯ ಕೇಳೆಂದ ೧೫

ಕಾಲವಶದಲಿ ಕೌಶಿಕನನಾ
ಕಾಲದೂತರು ತಂದರಾತನ
ಮೇಲುಪೋಗಿನ ಸುಕೃತ ದುಷ್ಕೃತವನು ವಿಚಾರಿಸಲು
ಮೇಲನರಿಯದೆ ಸತ್ಯದಲಿ ವಿ
ಪ್ರಾಳಿ ವಧೆಯಾತಂಗೆ ಬಂದುದು
ಹೇಳಲದು ಭೋಕ್ತವ್ಯವತಿ ಪಾತಕದ ಫಲವೆಂದ ೧೬

ನರಕಕಾತನ ನೂಕಿದರು ವಿ
ಸ್ತರಣವೆಂತೈ ಪಾರ್ಥ ಸತ್ಯದ
ಹುರುಳನರಿಯದೆ ಕಾಳುಗೆಡೆದರೆ ಕಾರ್ಯವೆಂತಹುದು
ಮರುಳೆ ಕೇಳದ್ಭುತವ ಹಿಂಸಾ
ಪರನಹರ್ನಿಶವಾ ದುರಾತ್ಮನ
ವರಿಸಿದರು ದೇವಾಂಗನೆಯರೀ ಕಥೆಯ ಕೇಳೆಂದ ೧೭

ಬನದೊಳೊಬ್ಬ ಬಳಾಕನೆಂಬವ
ವನಚರನು ತನ್ನಯ ಕುಟುಂಬವ
ನನುದಿನವು ಮೃಗವಧೆಯಲೇ ಸಲಹಿದನು ಬೇಸರದೆ
ತನಗೆ ಕಡೆಪರಿಯಂತ ಮತ್ತೊಂ
ದನುವನರಿಯನು ರಾಗ ಲೋಭವ
ನೆನೆಯನದರಿಂ ಹಿಂಸೆ ಸಂದುದು ವೃತ್ತಿರೂಪದಲಿ ೧೮

ವರವವಂಗೆ ಕುಟುಂಬ ರಕ್ಷಾ
ಕರಣ ಕಾರಣವಾದ ಹಿಂಸಾ
ಚರಣೆಯೆಂದೇ ಬರಹ ಧರ್ಮನ ಸೇನಬೋವನಲಿ
ಮರಣವಾತಂಗಾಗೆ ಕೊಂಡೊ
ಯ್ದರು ಸುರಾಂಗನೆಯರು ಧನಂಜಯ
ಪರಮ ಧರ್ಮರಹಸ್ಯವಾವಂಗರಿಯಬಹುದೆಂದ ೧೯

ಪಿತೃಸಮೋಭ್ರಾತಾ ಎನಿಪ್ಪುದು
ಶ್ರುತಿವಚನವರಸಂಗೆ ನೀನುಪ
ಹತಿಯ ಮಾಡಲು ನೆನೆದೆ ಮಾತಿನ ವಾಸಿ ಬೇಕೆಂದು
ಕ್ಷಿತಿಯೊಳಬುಜ ಮೃಣಾಳಕೋಸುಗ
ಕೃತತಟಾಕವನೊಡೆದವೊಲು ಭೂ
ಪತಿ ವಧವ್ಯಾಪಾರ ನಿರ್ಮಳ ಧರ್ಮವಹುದೆಂದ ೨೦

ಗುರುಹತಿಯೆ ಕರ್ತವ್ಯ ತಾನಾ
ದರಿಸಿ ಮಾಡಿದ ಮಾತನೇ ಪತಿ
ಕರಿಸುವುದು ಶ್ರುತಿವಿಹಿತ ಧರ್ಮವಿದೆಂಬುದೀ ಲೋಕ
ಎರಡರಭ್ಯಂತರವ ನೀನೇ
ನರಿಯದವನೇ ವೇದಶಾಸ್ತ್ರದ
ವರ ನಿಧಾನಜ್ಞಾತೃವಲ್ಲಾ ಪಾರ್ಥ ನೀನೆಂದ ೨೧

ಈಸು ನಿರ್ದಯನೆಂಬುದನು ನಾ
ವೀಸು ದಿನವರಿಯೆವು ಮಹಾದೇ
ವೇಸು ಪರಿಯಿಂತಿದ್ದುದೋ ನಿನ್ನಂತರಂಗದಲಿ
ಏಸನೋದಿದಡೇನು ಪಾಪ ವಿ
ಳಾಸ ರಚನಾ ರೌರವಾತ್ಮರ
ವಾಸನೆಗಳವು ಬೇರೆ ಹರಹರ ಎಂದನಸುರಾರಿ ೨೨

ನನೆದುದಂತಃಕರಣ ಮಧುಸೂ
ದನನ ಸೂಕ್ತಿ ಸುಧಾರಸದಿ ನೆರೆ
ನೆನೆದುದಾತನ ಮೈ ವಿಲೋಚನವಾರಿ ಪೂರದಲಿ
ಮನದ ಪರಿತಾಪ ವ್ಯಥಾ ದು
ರ್ಮನನು ಖಡ್ಗವನೊರೆಯೊಳೌಕುತ
ವಿನಯದಲಿ ಕೃಷ್ಣಂಗೆ ಬಿನ್ನಹ ಮಾಡಿದನು ಪಾರ್ಥ ೨೩

ನಾವು ನೆರೆ ಸರ್ವಾಪರಾಧಿಗ
ಳಾವ ಗುಣದೋಷವನು ನಮ್ಮಲಿ
ಭಾವಿಸುವೆ ನಾವೆತ್ತ ಬಲ್ಲೆವು ಧರ್ಮನಿರ್ಣಯವ
ಆವ ಪರಿಯಲಿ ತನ್ನ ಸತ್ಯದ
ಠಾವು ನಿಲುವುದು ರಾಯನುಪಹತಿ
ಯಾವ ಪರಿಯಿಂದಾಗದಿಹುದದನರಿದು ಬೆಸಸೆಂದ ೨೪

ಭರತವಂಶದೊಳುದಿಸಿದೆಮ್ಮ
ವರಿಗೆ ಇಹಲೋಕದ ನಿವಾಸಕೆ
ಪರದ ಸೌಖ್ಯಸ್ಥಿತಿಗೆ ಹೊಣೆ ನೀನಲ್ಲದೆಮಗಾರು
ದುರುಳರಾವನ್ವಯ ಮದದ ದು
ರ್ಧರ ಪರಾಕ್ರಮ ಮದದ ಘನ ಮ
ತ್ಸರಿಗೆ ಕೃಪೆಮಾಡೆಂದು ಬಿನ್ನಹ ಮಾಡಿದನು ಪಾರ್ಥ ೨೫

ಕೊಲುವುದೇನೊಂದರಿದೆ ಟೆಕ್ಕರಿ
ಗಳೆವುದೇ ಪರಹಿಂಸೆ ಲೋಗರ
ಹಳಿವುದೇ ವಧೆ ಶಸ್ತ್ರವಧೆ ವಧೆಯಲ್ಲ ನೋಡುವರೆ
ಖಳರ ದುಸ್ಸಹ ದುಷ್ಟವಚನದ
ಹಿಳುಕು ಹೃದಯವ ಕೊಂಡು ಮರುಮೊನೆ
ಮೊಳೆತ ಬಳಿಕವ ಬದುಕಿದವನೇ ಪಾರ್ಥ ಹೇಳೆಂದ ೨೬

ಅರಸಗುಪಹತಿಯೆನಿಸದೇ ನಿ
ಷ್ಠುರ ದುರುಕ್ತಿ ಕೃಪಾಣದಲಿ ಸಂ
ಹರಿಸಿದರೆ ನಿರ್ವಾಹವಾಗದೆ ನಿನ್ನ ನುಡಿಗಳಿಗೆ
ಪರಮ ಋಷಿಮತವೆನೆ ಮುರಾರಿಯ
ಸಿರಿವಚನಕೆ ಹಸಾದವೆಂದು
ಬ್ಬರದ ಗರ್ವೋಕ್ತಿಯಲಿ ಗರುವಿಕೆಗೆಡಿಸಿದನು ನೃಪನ ೨೭

ಎಲೆ ಯುಧಿಷ್ಠಿರ ಜನಿಸಿದೈ ಶಶಿ
ಕುಲದ ವೀರ ಕ್ಷತ್ರ ಪಂತಿಯೊ
ಳೆಳಮನದ ಕಾಳಿಕೆಯ ತೊಡಹದ ಗಂಡು ರೂಪಿನಲಿ
ನೆಲನ ಕೊಂಡರು ನಿನ್ನ ಮೋರೆಯ
ಬಲುಹ ಕಂಡೇ ಕೌರವರು ನಿ
ನ್ನೊಳಗೆ ಬಲ್ಲಿದನೆನ್ನ ಭಂಗಿಸಲೇಕೆ ನೀನೆಂದ ೨೮

ನಿನ್ನ ಜೂಜಿನ ವಿಲಗದಲಿ ಸಂ
ಪನ್ನರಾಜ್ಯವ ಬಿಸುಟು ನಿನ್ನಯ
ಬೆನ್ನಲಡವಿಯಲಾಡಿದೆವು ಹನ್ನೆರಡು ವರ್ಷದಲಿ
ಮನ್ನಿಸಿದೆ ಲೇಸಾಗಿ ಕೌರವ
ರಿನ್ನು ಕೊಡುವರೆ ನಿನಗೆ ರಾಜ್ಯವ
ನಿನ್ನ ಹಿಡಿದೇ ಭೀಮ ಬದುಕಲಿ ಎಂದನಾ ಪಾರ್ಥ ೨೯

ರಣದ ಥಾರಾಥಾರಿಯಾರೋ
ಗಣೆಯ ಮನೆಯಲ್ಲರಸ ಶಿರದಲಿ
ಕುಣಿವಡಾಯ್ದಕೆ ಸುಳಿವ ಸುರಗಿಗೆ ತಿವಿವ ಬಲ್ಲೆಹಕೆ
ಹಣಿವ ಲೌಡಿಗೆ ಪಾಯ್ದು ಬೀಳುವ
ಕಣೆಗೆ ಖಂಡದ ರುಧಿರ ರಣದೌ
ತಣವ ರಚಿಸದೆ ಬರಿದೆ ರಾಜ್ಯವ ಕೊಂಬೆ ನೀನೆಂದ ೩೦

ಕರುಳ ಕಂಕಣದಾರ ಮಿದುಳಿನ
ಶಿರವ ಬಾಸಿಗ ಭುಜದ ವಕ್ಷದ
ಕರದ ಘಾಯದ ತೋಳ ಬಂದಿಯ ಪದಕ ಸರಪಣಿಯ
ಅರುಣಜಲ ಲುಳಿತಾಂಬರದ ಸಂ
ಗರ ವಿವಾಹದ ಭೂಷಣದ ಸೌಂ
ದರಿಯವಿಲ್ಲದೆ ರಾಜ್ಯಸಿರಿ ನಿನಗೊಲಿವಳಲ್ಲೆಂದ ೩೧

ಇಂದಿನಲಿ ಹದಿನೇಳು ದಿನವಿ
ಲ್ಲಿಂದ ಹಿಂದಣ ಬವರದಲಿ ನೀ
ನೊಂದುದುಂಟೇ ದ್ರೋಣ ಭೀಷ್ಮರ ಕೋಲ ತೋಹಿನಲಿ
ಒಂದು ತೂರಂಬಿನಲಿ ಗಡ ನೀ
ನಿಂದು ಜೀವವ ಜಾರಿಸುವೆ ಸುಡ
ಲಿಂದುಕುಲ ಕಂಟಕರನಿರಿದರೆ ದೋಷವೇನೆಂದ ೩೨

ಎನುತಡಾಯ್ದವನೊರೆಯೊಳುಗಿದ
ರ್ಜುನನು ತನ್ನಯ ಕೊರಳ ಸಂದಿಗೆ
ಮನದೊಳಗೆ ಖಯಖೋಡಿಯಿಲ್ಲದೆ ಚಾಚಿದನು ಬಳಿಕ
ದನುಜರಿಪುವಡಹಾಯ್ದು ಪಿಡಿದೀ
ತನ ಕೃಪಾಣವ ಕೊಂಡು ನಿನ್ನಯ
ನೆನಹಿದೇನೈ ಪಾರ್ಥ ಹೇಳೆನ್ನಾಣೆ ಹೇಳೆಂದ ೩೩

ಏನ ಹೇಳುವೆನಡ್ಡ ಹಾಯಿದು
ನೀನೆ ಕೆಡಿಸಿದೆಯೆಮ್ಮನಲ್ಲದ
ಡೇನ ಮಾಡೆನು ಸತ್ಯಶೌರ್ಯದ ಹಾನಿ ಹರಿಬದಲಿ
ಈ ನರೇಂದ್ರನ ಕೊಂದ ನನಗಿ
ನ್ನೇನು ದೇಹಕೆ ತಲೆಯೊಡನೆ ಸಂ
ಧಾನವೇ ಸಾಕೆನ್ನ ಕೈದುವನೆನಗೆ ನೀಡೆಂದ ೩೪

ಎಲವೊ ಖೂಳ ಕಿರೀಟಿ ಮಂತ್ರೆಯು
ತಿಳಿಯೆಲಾ ನೀನಾವ ಪರಿಯಲಿ
ಮುಳಿದು ರಾಯನನಿರಿದೆ ನಿನಗೆಯು ತದ್ವಿಧಾನದಲಿ
ಅಳಿವ ನೆನೆಯಾ ಸಾಕು ದೇಹವ
ನಳಿವುದೇ ಕೊಲೆಯಲ್ಲ ನಿನ್ನ
ಗ್ಗಳಿಕೆಗಳನೀನಾಡಿ ನಿನ್ನನೆ ಕೊಂದುಕೊಳ್ಳೆಂದ ೩೫

ಸಂದ ಪರಿಯಿದು ಜಗಕೆ ಲೋಗರ
ನಿಂದಿಸುವುದೇ ಹಿಂಸೆ ತನ್ನನೆ
ಕೊಂದವನು ತನ್ನಾಳುತನವನು ತಾನೆ ಹೊಗಳಿದರೆ
ಎಂದಡರ್ಜುನನವನಿಪಾಲಂ
ಗೆಂದನೆನಗಿದಿರಾಗಿ ರಣದಲಿ
ನಿಂದು ಕಾದುವನಾರು ದನುಜಾಮರರ ಥಟ್ಟಿನಲಿ ೩೬

ನಾನಲಾ ದ್ರೌಪದಿಯ ಮದುವೆಯೊ
ಳಾ ನರೇಂದ್ರರ ಗೆಲಿದವನು ಬಳಿ
ಕಾ ನಿಳಿಂಪ ವ್ರಜವ ಮುರಿದುರುಹಿದೆನು ಖಾಂಡವವ
ಏನನೆಂಬೆನು ಸಕಲ ಕೌರವ
ಸೇನೆಯನು ಗೋಗ್ರಹಣದಲಿ ಸಲೆ
ನಾನಲೇ ರಥವೊಂದರಿಂದವೆ ಗೆಲಿದೆ ದಿಟವೆಂದ ೩೭

ಬಳಿಕ ಭೀಷ್ಮನನಾರು ರಣದಲಿ
ಗೆಲಿದವನು ದ್ರೋಣ ಪ್ರತಾಪಾ
ನಳನ ನಂದಿಸಿದಾತನಾರು ಮಹಾಹವಾಗ್ರದಲಿ
ಮಲೆತು ನಿಂದರೆ ಸೂತತನಯನ
ಕೊಲುವನಾವನು ಎನ್ನ ಟಿಕ್ಕರಿ
ಗಳೆವೆ ನೀನೆನ್ನೊಡನೆ ಸೆಣಸುವ ಭಟನ ತೋರೆಂದ ೩೮

ಉಂಟು ಫಲುಗುಣ ನಿನ್ನ ಹೋಲಿಸ
ಲುಂಟೇ ಸುಭಟರು ದೇವ ದೈತ್ಯರೊ
ಳೆಂಟು ಮಡಿ ನಾವರಿಯೆವೇ ಕೈವಾರವೇನದಕೆ
ಕಂಟಣಿಸದಿರು ಕೃಷ್ಣನಿಕ್ಕಿದ
ಗಂಟಿನಲಿ ಸಿಲುಕದಿರು ತನ್ನಯ
ಗಂಟಲಿದೆ ಶಸ್ತ್ರೌಘವಿದೆ ನೀ ಬೇಗ ಮಾಡೆಂದ ೩೯

ಭರತ ಕುಲದಲಿ ಭಾಗಧೇಯ
ಸ್ಫುರಣ ಹೀನರನೆಮ್ಮನುರೆ ಧೀ
ಕ್ಕರಿಸಿದಾದಡೆ ಮುನಿದು ಮಾಡುವುದೇನು ವಿಧಿಯೊಡನೆ
ಅರಿನೃಪಾಲರ ಗೆಲಿದು ವಿಶ್ವಂ
ಭರೆಯ ಕೊಂಡರೆ ಭೀಮಸೇನನ
ನರಸುತನದಲಿ ನಿಲಿಸು ಸುಖದಲಿ ಬದುಕಿ ನೀವೆಂದ ೪೦

ಇರಿದು ಮೆರೆವ ವಿನೋದ ವಿಗ್ರಹ
ದಿರಿತವೇ ಹಿಂದಾಯ್ತು ಹರಹಿನೊ
ಳುರುವ ಫಲಿತದ ಬೀಡು ಬಿಟ್ಟುದು ನಮ್ಮ ತನುವಿನಲಿ
ಇರಿದ ಕರ್ಣನೆ ಸಾಲದೇ ಪೆಣ
ನಿರಿದು ಪಗೆಯೇಕೆಂಬ ಮಾತನು
ಮರೆದು ಕಳೆದೈ ತಮ್ಮ ಎಂದವನೀಶ ಬಿಸುಸುಯ್ದ ೪೧

ನಿನ್ನ ಜನನಿಯ ಜಠರದಲಿ ತಾ
ಮುನ್ನ ಜನಿಸಿದೆನೀ ಗುರುತ್ವಕೆ
ಮನ್ನಿಸಿದೆ ಸಾಕೈಸಲೇ ಸರ್ವಾಪರಾಧವನು
ಎನ್ನನೊಬ್ಬನನುಳಿಯಲುಳಿದರ
ಭಿನ್ನ ಸಾಹೋದರ್ಯ ಸಂಪ್ರತಿ
ಪನ್ನಗುಣರವರೊಡನೆ ಸುಖದಲಿ ರಾಜ್ಯ ಮಾಡೆಂದ ೪೨

ಸೇರುವುದು ಭೀಮನಲಿ ಸಾಹಂ
ಕಾರನಾತನ ಕೊಂಡು ನಡೆವುದು
ಕಾರಣಿಕ ನೀನಾದಡೀ ಸಹದೇವ ನಕುಲರನು
ಆರಯಿದು ಸಲಹುವುದು ದ್ರುಪದ ಕು
ಮಾರಿಯನು ಬೇಸರಿಸದೀ ಪರಿ
ವಾರವನು ಮನ್ನಿಸುವುದರ್ಜುನದೇವ ಕೇಳೆಂದ ೪೩

ಎನುತ ನಯನೋದಕದ ಸರಿಯಲಿ
ನನೆದವಲ್ಲಿಯ ಬಾಹುಮೂಲದ
ಕನಕದೊರೆಯ ಕಠಾರಿಯವನಿಪನೆದ್ದು ಸಂವರಿಸಿ
ಮನದ ದುಗುಡದ ದಡಿಯ ಮೋರೆಯ
ತನಿ ಹೊಗರ ಬಿಸುಸುಯ್ಲ ತವಕದ
ಬನದ ಪಯಣದ ಧರ್ಮಸುತ ಹೊರವಂಟನರಮನೆಯ ೪೪

ರಾಯನಪರೋಕ್ಷದಲಿ ರಾಜ್ಯ
ಶ್ರೀಯ ಬೇಟವೆ ಶಿವ ಶಿವಾದಡೆ
ತಾಯ ನುಡಿ ತೊದಳಾಯ್ತೆ ತಮತಮ್ಮಂತರಂಗದಲಿ
ಆಯಿತಿದು ಲೇಸೆನುತ ತಮ ತ
ಮ್ಮಾಯುಧಂಗಳ ಕೊಂಡು ವರ ಮಾ
ದ್ರೇಯರರಸನ ಕೂಡೆ ಹೊರವಂಟರು ನೃಪಾಲಯವ ೪೫

ಕೊರಳನೊಲೆದಳು ಭಾಪು ದೈವದ
ಪರುಠವಣೆ ದುಶ್ಶಾಸನನ ನೆ
ತ್ತರಿನ ವೇಣೀಬಂಧಕಘಟಿತವಾಯ್ತು ಸಂಬಂಧ
ತರಣಿ ಬಿಜಯಂಗೈದರಬುಜದ
ಸಿರಿಗೆ ಸುಮ್ಮಾನವೆ ಎನುತ ಪಂ
ಕರುಹಮುಖಿ ಸಖಿಯರು ಸಹಿತ ಹೊರವಂಟಳರಮನೆಯ ೪೬

ಸದನವನು ತಮತಮಗೆ ಹೊರವಂ
ಟುದು ನೃಪಾಲಸ್ತೋಮ ದುಮ್ಮಾ
ನದಲಿ ಧೃಷ್ಟದ್ಯುಮ್ನ ಸಾತ್ಯಕಿ ಚೇಕಿತಾನಕರು
ಕದಡಿತಾ ಪರಿವಾರ ವಾರಿಧಿ
ಕೆದರಿ ಹೊರವಂಟುದು ಕಿರೀಟಿಯ
ಹೃದಯ ಹೊಗೆದುದು ಹೊತ್ತಿದನುಪಮ ಶೋಕವಹ್ನಿಯಲಿ ೪೭

ಮೂಗನಾದನು ಪಾರ್ಥ ನೃಪ ಚಿಂ
ತಾಗಮದೊಳಳ್ಳಿರಿವ ಶೋಕದ
ಸಾಗರವನೀಸಾಡಿ ತೆರೆಗಳ ಹೊಯ್ಲ ಹೊದರಿನಲಿ
ಆ ಗರುವನಡಿಗದ್ದು ಮೂಡಿದ
ನಾಗಳೇ ತಡಿಗಡರಿ ಬಳಲಿದು
ತಾಗಿದನು ನೆರೆ ತಳ್ಳವಾರುತ ಪಾರ್ಥ ಹೊರವಂಟ ೪೮

ಹರಿದು ಬೀದಿಯೊಳವನಿಪಾಲನ
ಚರಣದಗ್ರದೊಳೊಡಲ ಹಾಯಿಕಿ
ಹೊರಳಿದನು ಹೊನಲಿಡುವ ಲೋಚನವಾರಿ ಪೂರದಲಿ
ಧರಣಿಪತಿಯೆ ದುರಾತ್ಮಕನನು
ದ್ಧರಿಸಬೇಹುದು ಜೀಯ ಕರುಣಾ
ಕರನಲಾ ನೀನೆನುತ ಪಿಡಿದನು ಭೂಪನಂಘ್ರಿಗಳ ೪೯

ಮಾಡಿದೆನ್ನಪರಾಧ ಶತವನು
ನೋಡಲಾಗದು ಕರುಣದಲಿ ನೀ
ಖೋಡಿಯನು ಬಿಡು ಚಿತ್ತಗೊಡದಿರು ಖತಿಯ ಘಲ್ಲಣೆಗೆ
ನೋಡುವುದು ಕಾರುಣ್ಯದೃಷ್ಟಿಯೊ
ಳೀಡಿರಿವ ಘನ ಶೋಕವಹ್ನಿಗೆ
ಖೇಡನಾದೆನು ಜೀಯೆನುತ ಹಲುಬಿದನು ಕಲಿಪಾರ್ಥ ೫೦

ಏಳು ತಂದೆ ಕಿರೀಟಿ ತನ್ನಾ
ಣೇಳು ಸಾಕೀ ಹವಣೆನಲಿ ಮು
ನ್ನಾಳಿಕೆಯ ಕಾಂತಾರ ರಾಜ್ಯದ ಸಿರಿಯೆ ಸಾಕೆಮಗೆ
ಬಾಲಕರು ನೀವ್ ಮೇಲಣದು ದು
ಷ್ಕಾಲವೀ ಸಾಮ್ರಾಜ್ಯ ಭೋಗ
ವ್ಯಾಳ ವಿಷಕಂಜುವೆನು ಪಾಂಡುವಿನಾಣೆ ಸಾರೆಂದ ೫೧

ಹಿಂಗದಿನ್ನೂ ದ್ವಾಪರದ ಸ
ರ್ವಾಂಗವೀ ದ್ವಾಪರದ ಸೀಮಾ
ಸಂಗದಲಿ ಸಿಗುರೆದ್ದ ಕಲಿಕೆಯ ಸೊಗಡ ಸೋಹಿನಲಿ
ಸಂಗಡಿಸಿತಧರೋತ್ತರದ ಸಮು
ರಂಗವೀ ಹದನರಿದು ರಾಜ್ಯಾ
ಸಂಗ ಸುಗತಿವ್ಯರ್ಥನಹೆನೇ ಪಾರ್ಥ ಹೇಳೆಂದ ೫೨

ಸಾಕು ಪಾರ್ಥನ ಬಿನ್ನಹವ ಕೆಡೆ
ನೂಕದಿರು ನೆಳಲಿಂಗೆ ಬೇರೆ ವಿ
ವೇಕ ಚೇಷ್ಟೆಗಳೇ ಸಹೋದರರೀ ಚತುಷ್ಟಯಕೆ
ಈ ಕಮಲಮುಖಿಯರಿಗೆ ನಿನ್ನಾ
ಲೋಕವಲ್ಲದೆ ಬೇರೆ ಕಾರ್ಯ
ವ್ಯಾಕುಳತೆ ಬೇಡೆಂದು ಮುರರಿಪು ತಿರುಹಿದನು ನೃಪನ ೫೩

ಹದಿನೆಂಟನೆಯ ಸಂಧಿ

ಸೂ. ಗಂಡುಗಲಿ ಯಮತನುಜನಲಿ ಮಾ
ರ್ತಾಂಡ ತನಯನ ವಧೆಗೆ ನೇಮವ
ಕೊಂಡು ಕದನೋದ್ದಾಮದಲಿ ಹೊರವಂಟನಾ ಪಾರ್ಥ

ಕೇಳು ಧೃತರಾಷ್ಟ್ರಾವನಿಪ ಭೂ
ಪಾಲನನು ಸಾಮದಲಿ ಮುರರಿಪು
ಬೋಳವಿಸಿ ಭಾವಜ್ಞ ನಂದಿಸಿದನು ಮನೋವ್ಯಥೆಯ
ಮೇಲುಸುರ ಬಿಕ್ಕುಳಿನ ಬಿಗುಹಿನ
ತಾಳಿಗೆಯ ನೀರುಗಳ ಮುಕ್ಕುಳಿ
ನಾಲಿಗಳ ನರನಾಥ ತೆಗೆದಪ್ಪಿದನು ಫಲುಗುಣನ ೧

ಒರಲುತರಸನ ಮುರುಚಿಕೊಂಡಡಿ
ಗೆರಗೆ ಕೈಯೊಡನವನಿಪತಿ ಮುರಿ
ದೆರಗಿ ಪಾರ್ಥನ ಸೇರಿ ತಕ್ಕೈಸಿದನು ಗೋಳಿಡುತ
ಮರುಗಿದಳು ದ್ರೌಪದಿ ದೃಗಂಬುಗ
ಳೊರತೆಯಲಿ ಸಹದೇವ ನಕುಳರ
ಲರಿಯೆನುಪಮಿಸಲವರ ಬಹುಳಾಕ್ರಂದನ ಧ್ವನಿಯ ೨

ಮುರಹರನ ಮಂತ್ರದಲಿ ಶೋಕ
ಜ್ವರಕೆ ಬಿಡುಗಡೆಯಾಯ್ತು ಬಳಿಕಿನೊ
ಳರಸ ಸಿರಿಮೊಗದೊಳೆದು ವಸನಾಂಚಲದೊಳಾನನವ
ಒರಸಿ ಪಾರ್ಥನ ಸಂತವಿಸಿ ಮಂ
ದಿರಕೆ ಬಿಜಯಂಗೈದು ಮುದದಲಿ
ಕರಸಿ ಕಾಣಿಕೆಗೊಂಡು ಪರಿವಾರವನು ಮನ್ನಿಸಿದ ೩

ಇಟ್ಟಣಿಸುವರಿಸೈನ್ಯ ಜಲಧಿಗೆ
ಕಟ್ಟೆಯಾದನು ಭೀಮನೊಬ್ಬನ
ಬಿಟ್ಟು ನೋಡುವುದುಚಿತವೇ ಪರಿವಾರ ಪಂಥದಲಿ
ಕೊಟ್ಟ ನೇಮವ ಯಮಳರಿಗೆ ಜಗ
ಜಟ್ಟಿ ಸಾತ್ಯಕಿ ಕಮಲಮುಖಿಯೊಡ
ಹುಟ್ಟಿದನು ಮೊದಲಾಗಿ ನೃಪಜನವೇಳಿ ನೀವೆಂದ ೪

ದೇವ ಪರಿವಾರಕ್ಕೆ ನೇಮವ
ನೀವ ಸಮಯದಲಿಂದು ನಿಮ್ಮ ಕೃ
ಪಾವಲೋಕನವಾದುದೆನ್ನ ಪರಾಕ್ರಮಾನಳಕೆ
ಜೀವಸಖನಲ್ಲಾ ಸುಯೋಧನ
ನಾವ ಪಾಡು ವಿರೋಧಿಕುಲ ವಿ
ದ್ರಾವಣಕೆ ಕೊಡು ತನಗೆ ನೇಮವನೆಂದನಾ ಪಾರ್ಥ ೫

ಬರಸು ಭಾಷೆಯನಿಂದು ಕರ್ಣನ
ಶಿರವುಳಿದು ತಾವರೆಯ ನಗೆ ಪೈ
ಸರಿಸಿದರೆ ಮೈಬೆಸುಗೆ ಬಿಟ್ಟರೆ ಜಕ್ಕವಕ್ಕಿಗಳ
ಇರುಳ ಬೀಜವನಿಂದು ನಭದಲಿ
ಹರಹಿದರೆ ಕಲಿ ಭೀಮನಯ್ಯನ
ಹರಹು ನಿಂದರೆ ಬಳಿಕ ನಿಮ್ಮಯ ತಮ್ಮನಲ್ಲೆಂದ ೬

ಖಳನ ಹಿಂಸಾಪರನ ಡಂಬನ
ಚಳಮತಿಯ ನಾಸ್ತಿಕನ ನಿಂದಾ
ಕುಳನ ಪರಧನಬಾಧಕನ ದತ್ತಾಪಹಾರಕನ
ಜ್ವಲನದನ ಶಿಶುಘಾತಕನ ಪರಿ
ದಳಿತಧರ್ಮನ ಗತಿಗಳಲಿ ತಾ
ನಿಳಿವೆನಿಂದೇ ಕೊಲ್ಲದಿರ್ದರೆ ಸೂತನಂದನನ ೭

ನೀನಿನಿತ ನೆರೆ ನುಡಿವರೇ ತ
ನ್ನಾಣೆ ಬಾರೈ ತಂದೆ ಬಾ ಎನು
ತಾ ನರೇಶ್ವರ ತೆಗೆದು ಬಿಗಿಯಪ್ಪಿದನು ಫಲುಗುಣನ
ದಾನವಾಮರರೊಳಗೆ ನಿನಗೆ ಸ
ಮಾನ ಭಟರಿಲ್ಲೆಂಬುದೀ ಸ್ನೇ
ಹಾನುಗುಣವೇ ಲೋಕವರಿಯದೆ ಪಾರ್ಥ ಹೇಳೆಂದ ೮

ತಾಯೆನುತ ಘನ ಸಾರದುರು ತವ
ಲಾಯಿಗಳ ನೂಕಿದನು ಮುಂದದಲಿ
ಬಾಯ ತಂಬುಲವಿತ್ತು ತಮ್ಮನ ಮತ್ತೆ ತಕ್ಕೈಸಿ
ರಾಯ ಕೇಳ್ಕೆ ಬಳಿಕಖಿಳ ದಳ
ನಾಯಕರ ಕರೆಕರೆದು ಕದನ ಪ
ಸಾಯತರಿಗಿತ್ತನು ನೃಪತಿ ಕರ್ಪುರದ ವೀಳೆಯವ ೯

ನೇಮವಾಯಿತು ಮತ್ತೆ ನೃಪತಿ
ಸ್ತೋಮವರ್ಜುನನೊಡನೆ ಕದನೋ
ದ್ದಾಮರುಬ್ಬರಿಸಿದರು ಪತಿಕರಣೆಗೆ ಮಣೀಪತಿಯ
ಸೋಮಕರು ನಕುಲಾದಿಗಳು ಸುತ
ಸೋಮಕಾದಿ ಕುಮಾರರಖಿಳ ಸ
ನಾಮರೆದ್ದುದು ತೊಡರ ಝಣಝಣ ರವದ ಖಡೆಯದಲಿ ೧೦

ನುಡಿವ ವಾದ್ಯದ ಜಡಿವ ಕಹಳೆಯ
ಹೊಡೆವ ಭೇರಿಯ ರವದ ರಭಸದೊ
ಳೊಡೆದುದಾ ದಿಗುಭಿತ್ತಿಯೆನೆ ಚಲಿಸುವ ಚತುರ್ಬಲದ
ತುಂಡುಕು ಚವರಿಯ ಝಾಡಿಗೆದರಿನ
ಗಡಣಿಸುವ ಝಲ್ಲರಿಯ ದಳ ಬರ
ಸಿಡಿಲ ಮೇಳವದಂತೆ ನೆರೆದುದು ನೃಪತಿಯಿದಿರಿನಲಿ ೧೧

ವೀರ ಸೇಸೆಯನಿಕ್ಕಿ ರಾಯನ
ನಾರಿ ಪರಸಿದಳಖಿಳ ವಿಪ್ರರ
ಚಾರು ಚಾತುರ್ವೇದ ಮಂಗಳಸೂಕ್ತ ಘೋಷದಲಿ
ತೇರನೇರಿದನಸುರರಿಪು ಸಹಿ
ತಾರುಭಟೆಯಲಿ ನೂಕಿದವು ರತು
ನಾರತಿಯ ತಳಿಗೆಗಳು ವರ ಕಾಂತಾ ಕದಂಬದಲಿ ೧೨

ಕೊಡೆ ಗರಿಗಟ್ಟಿದವು ರಥದಲಿ
ಹೂಡಿದಶ್ವವ್ರಾತವಾನೆಗ
ಳೀಡಿರಿದು ಬರಿಕಯ್ಯನೆತ್ತಿದವೊಲೆದವಡಿಗಡಿಗೆ
ಜೋಡಿಸಿತು ಜಯ ಜಯ ಜಯಧ್ವನಿ
ಕೂಡೆ ಜಗದಗಲದಲಿ ಬಿರುದುಪ
ವಾಡಗಳ ಮೊಗನೆಗಹಿ ಹೊಗಳಿತು ವಂದಿ ಸಂದೋಹ ೧೩

ನಿಳಯುವನು ಹೊರವಂಟು ಬೀದಿಗ
ಳೊಳಗೆ ಬರೆಬರೆ ಮುಂದೆ ಮೋಹಿದ
ತಳಿಗೆದಂಬುಲ ವೀರಸೇಸೆಯ ಮಂಗಳಾರತಿಯ
ಫಲ ಸಮೂಹದ ಕಾಣಿಕೆಯ ಕೋ
ಮಲೆಯರುಪ್ಪಾರತಿಯ ಮನೆಮನೆ
ಗಳಲಿ ಮನ್ನಿಸಿಕೊಳುತ ಪಾಳೆಯದಿಂದ ಹೊರವಂಟ ೧೪

ಮೇಲೆ ಮೊಳಗುವ ದೇವದುಂದುಭಿ
ಜಾಲದೊಸಗೆಯ ಪಕ್ಷಿಮೃಗದನು
ಕೂಲ ಶಕುನದ ಸೌಮನಸ್ಯದ ಸಾಧುವಾದದಲಿ
ಲಾಲನೆಯ ಮೈವಳಿಯ ಲಳಿಯ ವಿ
ಶಾಲ ಮಂದಾನಿಲನಖಿಳ ಭೂ
ತಾಳಿ ಸಂತೋಷದಲಿ ಪತಿಕರಿಸಿತು ಧನಂಜಯನ ೧೫

ನಡೆದು ಬಂದುದು ರಾಯದಳ ಮುಂ
ಗುಡಿಯ ವಾದ್ಯಧ್ವನಿಯ ಥಟ್ಟಣೆ
ತುಡುಕಿತರಿ ಚತುರಂಗ ಚಪಳರ ಕರ್ಣ ಕೋಟರವ
ನಡುಗಿದವು ಕೈದುಗಳು ಜೋಧರ
ಕೊಡಹಿದವು ಗಜರಾಜಿ ವಾಜಿಯ
ಗಡಣವೀಡಾಡಿದವು ರಾವುರನಿವರ ಥಟ್ಟಿನಲಿ ೧೬

ಅರಸ ಕೇಳೈ ಸಮರಭೂಮಿಂಗೆ
ಪರಿದರರಸಾಳುಗಳು ರಾಯನ
ಸಿರಿಮುಡಿಗೆ ಸುಕ್ಷೇಮ ಮುಚ್ಚಿದವೇರುಮದ್ದಿನಲಿ
ಮರಳಿ ನೇಮವ ಕೊಂಡು ಫಲುಗುಣ
ಬರುತಲೈದನೆ ಜೀಯ ನಿಮ್ಮಯ
ಚರಣ ಸರಸಿಜದಾಣೆಯೆಂದರು ಭೀಮಸೇನಂಗೆ ೧೭

ಜೋಡು ಬಿರಿದುದು ಹರುಷಜಲ ಕಡೆ
ಗೋಡಿನರಿದುದು ರೋಮಪುಳಕದ
ಬೀಡು ಬಿಟ್ಟುದು ಮೈಯನುಬ್ಬಿದನೊಲೆದನಡಿಗಡಿಗೆ
ನೀಡುವರೆ ತಳುವೆನುತ ತೆಗೆದೀ
ಡಾಡಿದನು ದೂತರಿಗೆ ರತುನದ
ಜೋಡಣೆಯ ಭುಜ ಕಂಠ ಕರ್ಣಾಂಘ್ರಿಗಳ ಭೂಷಣವ ೧೮

ರಾಯ ಹದುಳಿಸಿದನೆ ಮಹಾದೇ
ವಾಯಿದೆತ್ತಣ ಪುಣ್ಯವೋ ರಣ
ದಾಯಸವ ಸೈರಿಸಿದ ತನಗಿದು ಸಫಲವಾಯಿತಲ
ದಾಯ ಬಂದುದು ನಮಗೆ ಹೋ ಲೇ
ಸಾಯಿತೇಳು ವಿಶೋಕ ಸಾಕುಳಿ
ದಾಯುಧದ ಪರಿಗಣಿತವನು ಹೇಳೆಂದನಾ ಭೀಮ ೧೯

ಉಳಿದ ಕೈದುಗಳೇಸು ಬಂಡಿಯ
ಲುಳಿದ ಸರಳಿನ ಹೊದೆಯ ಲೆಕ್ಕವ
ತಿಳಿದು ಹೇಳೈ ತಂದೆ ಸಾರಥಿ ನೋಡಲಹುದಿನ್ನು
ಅಳಲಿಸಿದ ಕೌರವನ ರಕ್ತದ
ಮಳೆಯೊಳಲ್ಲದೆ ತನ್ನ ಕೋಪಾ
ನಳನ ಝಳವಡಗದು ಯುಧಿಷ್ಠಿರ ರಾಯನಾಣೆಂದ ೨೦

ಅರಸ ಚಿತ್ತವಿಸುಳಿದ ಧನು ಹ
ನ್ನೆರಡುಸಾವಿರ ಬಲುಸರಳು ಹ
ನ್ನೆರಡುಸಾವಿರ ಬೋಳೆಯೈನೂರರ್ಧಚಂದ್ರಶರ
ಪರಿಗಳಿತ ಲುಳಿಯಂಬು ಕಣಗಿಲ
ಸರಳುಗೂಡಿಪ್ಪತ್ತು ಸಾವಿರ
ವೆರಡುಸಾವಿರವುಳಿದವೀ ನಾರಾಚ ನಿಕರದಲಿ ೨೧

ಆಲಿಸೈ ಮುಗುಳಂಬು ಸಾವಿರ
ವೇಳು ಬಳಿಕೊಂಬತ್ತು ಸಾವಿರ
ಕೋಲು ವೀಂಟೆಯ ಕವಲುಗಣೆ ಹನ್ನೆರಡುಸಾವಿರವು
ಮೇಲೆ ಸಾವಿರ ನಾಲ್ಕು ಮುಮ್ಮೊನೆ
ಬೋಳೆಯಂಬೀರೈದುಸಾವಿರ
ನಾಳಿಯಂಬುಗಳಾರುಬಂಡಿಯ ಲೆಕ್ಕವಿದೆಯೆಂದ ೨೨

ಪರಶು ಮುಸಲ ಮುಸುಂಡಿ ಸೆಲ್ಲೆಹ
ಪರಿಘ ತೋಮರ ಚಕ್ರವಸಿ ಮು
ದ್ಗರ ತ್ರಿಶೂಲ ಕಠಾರಿ ಖೇಟಕ ಪಿಂಡಿವಾಳಚಯ
ಸುರಗಿ ಮೊದಲಾದಖಿಳ ಶಸ್ತ್ರೋ
ತ್ಕರವನೊಂದೇ ಬಂಡಿಯಲಿ ಸಂ
ವರಿಸಿದೆನು ರಿಪುರಾಯರೊಡಲಲಿ ಬೀಯಮಾಡೆಂದ ೨೩

ಪೂತು ಸಾರಥಿ ಈಸುಬಾಣ
ವ್ರಾತವುಳಿದುದೆ ತನ್ನ ಕರ ಕಂ
ಡೂತಿಯನು ಕಳಚುವೆನಲಾ ಕೌರವನ ನೆತ್ತಿಯಲಿ
ಆತನೇನಾದನು ಯುಧಿಷ್ಠಿರ
ಸೋತು ಪಿಂಗಿದನೆಂಬ ಹಂಬಲ
ಬೀತುದಿನ್ನೇನೆನ್ನ ನೋಡಾ ಎನುತ ಗರ್ಜಿಸಿದ ೨೪

ಚಳಯದಲಿ ಫಲುಗುಣನ ಮೋಹರ
ಕಳನ ಪೊಕ್ಕುದು ಹಲವು ಮೊನೆಯಲಿ
ತಳಿತು ನಿಂದುದು ಜಡಿವ ಬಹುವಿಧವಾದ್ಯರಭಸದಲಿ
ಅಳುಕಿತೀ ನಮ್ಮವರು ಭೀಮನ
ಸುಳಿವಿನಲಿ ಸೊಪ್ಪಾದೆವರ್ಜುನ
ನೆಳತಟಕೆ ನಿಲವೆಂತೆನುತ ನೆಗ್ಗಿದುದು ದುಗುಡದಲಿ ೨೫

ದಳದ ಮಧ್ಯದೊಳೊಂದು ರಥದಲಿ
ಹೊಳೆದು ದುವ್ವಾಳಿಸಿ ಧನಂಜಯ
ನಿಲಿಸಿದನು ನಿಜರಥವ ಭೀಮನ ರಥದ ಮುಂಬಿನಲಿ
ಬಳಿಕ ತನ್ನಿಂದಾದ ಕೋಳಾ
ಹಳವನಾ ತರುವಾಯಲವ್ವಾ
ಕುಳ ಸಮಾಧಾನವನು ಬಿನ್ನಹಮಾಡಿದನು ಪಾರ್ಥ ೨೬

ಜನಪ ಕೇಳೈ ಬಳಿಕ ಭೀಮಾ
ರ್ಜುನರ ಮೋಹರಕೈದುಸಾವಿರ
ಕನಕಮಯರಥಸಹಿತ ಬಿಟ್ಟನು ಶಕುನಿ ಸೂರಿಯಲಿ
ಅನಿಲಸುತನರ್ಜುನನ ನೀ ಸಾ
ರೆನುತ ಕೆದರಿದನಹಿತನಂಬಿನ
ಮೊನೆಯೊಳಳ್ಳಿರಿದೌಕಿ ತಂಡುಕುವ ತೇರ ತೆಕ್ಕೆಯಲಿ ೨೭

ಒಂದು ಶರಸಂಧಾನದಲಿ ಕವಿ
ತಂದವೈಸಾವಿರ ರಥಾವಳಿ
ಯೊಂದು ಧನುವಿನೊಳೀತ ಮೊಗೆದನು ಸರಳಸಾಗರವ
ಸಂದಣಿಸಿತಾ ರಥಿಕರಾ ಹಯ
ವೃಂದವಾ ಸಾರಥಿಗಳಾ ರಥ
ಕೊಂದುಹತ್ತರ ಲೆಕ್ಕದಲಿ ಮಿಕ್ಕವು ಶರವ್ರಾತ ೨೮

ಒಗ್ಗಿನೈಸಾವಿರ ರಥಾವಳಿ
ಮುಗ್ಗಿದವು ಕಣೆ ತಾಗಿ ರಥಿಕರು
ನೆಗ್ಗಿದರು ಮೇಲಂಬು ಸುಳಿದೊಯ್ದವು ಸಜೀವಿಗಳ
ಒಗ್ಗೊಡೆದು ಕಲಿಶಕುನಿ ಘಾಯದ
ಸುಗ್ಗಿಯಲಿ ಲಘುವಾಗಿ ಹರುಷದ
ಮುಗ್ಗಿಲೊಣಗಿಲ ಮೋರೆಯಲಿ ತಿರುಗಿದನು ಮೋಹರಕೆ ೨೯

ಶಕುನಿ ಮುರಿದನು ಬೇಹ ದಳನಾ
ಯಕರು ತಿರುಗಿತು ಭೀಮಸೇನನ
ವಿಕಟ ಸಿಂಹಧ್ವನಿಗೆ ಜರಿದುದು ಭಟರ ಬಲುಹೃದಯ
ಅಕಟಕಟ ಕುರುಸೇನೆ ನಿರ್ನಾ
ಯಕವಲಾ ಹಾ ಎನುತ ಮಂತ್ರಿ
ಪ್ರಕರ ಮರುಗಿತು ತುರುಗಿತಲ್ಲಿಯದಲ್ಲಿ ಕಳವಳಿಸಿ ೩೦

ಹತ್ತೊಂಬತ್ತನೆಯ ಸಂಧಿ

ಸೂ. ರಾಯ ಚೌಪಟಮಲ್ಲ ಮಲೆವರಿ
ರಾಯ ಧೂಳೀಪಟ್ಟ ಗರ್ವಿತ
ರಾಯ ಭೀಕರ ಭೀಮ ಕೊಂದನು ಕೌರವಾನುಜನ

ಕೇಳು ಧೃತರಾಷ್ಟ್ರಾವನಿಪ ನಿ
ನ್ನಾಳು ತಲೆಕೆಳಗಾಯ್ತು ಭೀಮನ
ಧಾಳಿ ಹೆಚ್ಚಿತು ಹೊಸತು ದಶಕದ ಮಸಕ ಮಿಗಿಲಾಯ್ತು
ಮೇಲೆಮೇಲುಬ್ಬೇಳ್ವ ರಿಪುಶರ
ಜಾಲ ಧಾರಾಧೂಮವಹ್ನಿ
ಜ್ವಾಲೆಗುರೆ ತೇರೈಸಿ ಕೋರೈಸಿತು ಕುರುಸ್ತೋಮ ೧

ಉಲುಕಲಮ್ಮರಿಲ್ಲಲಾ ಭಟ
ರಳುಕಿದರೆ ಭಾರಂಕದವರ
ಗ್ಗಳೆಯ ಬಿರುದರು ಬೀತರೇ ಸೋತರೆ ಪಲಾಯನಕೆ
ಹಲವು ಮಾತೇನೆಮ್ಮ ಮಾವನ
ಕಳನ ಹರಿಬಕೆ ನಾವೆ ಇನ್ನೈ
ಸಲೆ ಎನುತ ನೆರಹಿದನು ನಿನ್ನ ಕುಮಾರಕನು ದಳವ ೨

ಆ ವಿಗಡ ಪರಿವಾರದಲಿ ರಥ
ಸಾವಿರವ ಮೇಳೈಸಿದರು ದಂ
ತ್ಯಾವಳಿಯ ಬೇರೆಣಿಸಿ ನಿಲಿಸಿದರೈದುಸಾವಿರವ
ರಾವುತರೊಳಗ್ಗಳೆಯರನು ದಶ
ಸಾವಿರವ ಜೋಡಿಸಿದರಿನಿಬರು
ಸಾವನೇ ನಿಶ್ಚೈಸಿ ಬಿಗಿದರು ವೀರಕಂಕಣವ ೩

ಕುಡಿತೆಯಲಿ ಕರ್ಪುರವ ಸುರಿಸುರಿ
ದೊಡನೆ ಸಾದು ಜವಾಜಿಲೇಪವ
ಮುಡಿವ ಹೊಸಹೂಗಳನು ವರಗಂಧಾನುಲೇಪನದ
ಉಡುಗೊರೆಯ ವೀಳೆಯದ ರತ್ನದ
ತೊಡಿಗೆಗಳಲಾ ಪಟುಭಟರ ವಂ
ಗಡವ ಮನ್ನಿಸಿ ನಿನ್ನ ಮಗನನುವಾದನಾಹವಕೆ ೪

ಬಲದೊಳಗೆ ಹೆಸರುಳ್ಳವರು ನೃಪ
ತಿಲಕ ನೀ ಸಾಕಿದ ಕುಮಾರರು
ಹಳೆಯರಲಿ ಮಿಕ್ಕವರು ಮಕ್ಕಳ ತಂಡದಲಿ ಕೆಲರು
ಅಳಲಿಗರು ದುಶ್ಶಾಸನನ ಬಲ
ದೊಳಗೆ ನಿಂದುದು ಸಾಲಸಿಡಿಲಿನ
ಬಳಗವೋ ನಿನ್ನವರ ಬಣ್ಣಿಸಲರಿಯೆ ನಾನೆಂದ ೫

ಸಾಲ ಸಿಂಧದ ಮಣಿವ ಗೋವಳಿ
ಗೋಲ ತೂಕದ ತಳಿತ ಚೌರಿಯ
ಜಾಲವೋಹಿದ ಮೇಘಘಟೆಯೆನೆ ಜಡಿವ ಝಲ್ಲರಿಯ
ಜಾಳಿಗೆಯ ಹೊಗರೊಗುವ ವಹ್ನಿ
ಜ್ವಾಲೆಯೆನೆ ಝಳಪಿಸುವ ಕೈದುಗ
ಳೋಳಿ ಹೊಳೆದುದು ಸೆಳೆದುದೀತನ ಗರ್ವವಿಭ್ರಮವ ೬

ಹರೆದ ಬಲ ಹುರಿಗಟ್ಟಿ ಖತಿಯಲಿ
ದೊರೆಯ ಕೂಡೊದಗಿದುದು ಬೀರುವ
ಬಿರುದುಗಹಳೆಯ ದನಿಯ ಘಾಯದ ಭೂರಿ ಭೇರಿಗಳ
ಮೊರೆವ ಬಹುವಿಧ ವಾದ್ಯರಭಸದ
ಧರಧುರದ ಕೆಂಧೂಳಿಯಲಿ ಮೋ
ಹರಿಸಿ ಮುಸುಕಿತು ಭೀಮಸೇನನ ರಥದ ಬಳಸಿನಲಿ ೭

ಸಾರಹೇಳೋ ರಾಯಕುವರ ಮು
ರಾರಿ ದುಶ್ಶಾಸನ ಕಣಾ ಘಡ
ವೈರಿ ಭೀಮ ದ್ವಿರದ ಕುಂಭಸ್ಥಳಕೆ ಪಂಚಮುಖ
ವೀರಮನ್ಮಥ ತ್ರಿಪುರಹರ ಜು
ಜ್ಝಾರ ಭಟ ಜಗಜಟ್ಟಿಗಿದಿರೆ ವಿ
ಕಾರಿಯೋ ಘಡ ಭೀಮನೆನುತ್ತೈದಿತು ಭಟಸ್ತೋಮ ೮

ದಾಯವಿದು ಮರುಳು ಪೂತು ರಣದ ವಿ
ದಾಯಿಯಹುದೋ ಕಲಿ ಯುಧಿಷ್ಠಿರ
ರಾಯನಾಣೆ ಸುಯೋಧನಾನುಜನೋಜೆ ಲೇಸೆನುತ
ವಾಯುಸುತನಾಕರ್ಣ ಕರುಷಿತ
ಸಾಯಕನು ರಿಪುಸುಭಟಕುಲ ಲಯ
ದಾಯಕನು ದಳದುಳವ ಹಾಯ್ದನು ವೈರಿಮೋಹರವ ೯

ನುಸಿಗಳೆನ್ನೆವು ನೀವು ಜಗಸಾ
ಹಸಿಕರೈ ಕಾಲಾಳು ಜೋಧ
ಪ್ರಸರದೆಸುಗೆಗೆ ಹೆದರುವೆವು ಹೇರಾಳದಂಬುಗಳ
ದಶಕವುಳ್ಳವರಹಿರಿ ಸಮರಥ
ವಿಷಮರಾವ್ತರು ನೋಡುತಿರಿ ಸರ
ಳಿಸಲಿ ನಿಮ್ಮಯ ದೊರೆಗಳೆನುತುರವಣಿಸಿದನು ಭೀಮ ೧೦

ಸಾರಿರೈ ಕಾಲಾಳು ರಥಿಕರು
ಸಾರಿರೈ ರಾವುತರು ಜೋಧರು
ಭಾರಣೆಯಲಿರಿ ದೊರೆಯನರಸುವ ಬಯಲ ಬೊಬ್ಬೆಗಳ
ಆರುಭಟೆಗಾರಳುಕುವರು ಪರಿ
ವಾರ ಕೈಮಾಡದಿರೆನುತ ಕುರು
ವೀರನನುಜರು ತರುಬಿದರು ಪವಮಾನನಂದನನ ೧೧

ಸಡಿಫಡೇನಿದು ತಮ್ಮ ತಲೆಗಳಿ
ಗೊಡೆಯರಲ್ಲದೆ ಕೌರವಾನುಜ
ರೊಡೆಯರೇ ಪರಿವಾರದಭಿಮಾನಾವಮಾನದಲಿ
ಬಿಡುವವರು ನಾವಲ್ಲ ಭೀಮನ
ಕಡಿಯೊಳಗೆ ಕಡಿವೆರಸಿ ನೆತ್ತರು
ಗುಡಿಯೆವೇ ತಾವೆನುತ ದಳ ಮುಕ್ಕುರುಕಿತನಿಲಜನ ೧೨

ಏನ ಹೇಳುವೆನರಸ ತೂಳಿದ
ವಾನೆಗಳು ನಾರಾಚನಿಚಯದ
ಸೋನೆ ಸುರಿದುದು ಭೀಮಸೇನನ ರಥದ ಶಿಖರದಲಿ
ಭಾನುಬಿಂಬವ ಮೊಗೆವ ಲೌಡೆಯ
ಮಾನಸದ ಧಕ್ಕಡರು ಕಲಿ ಪವ
ಮಾನತನಯನ ಮುತ್ತಿಕೊಂಡರು ರಾಯರಾವುತರು ೧೩

ಬಳಸಿನಲಿ ಚಾಚಿದವು ರಥಸಂ
ಕುಳ ಪದಾತಿಯ ಕೈದು ಮಿಾರಿದ
ವಳವಿಯಲಿ ಮೊನೆಗಾಣಿಸಿದರರಿಸೂತವಾಜಿಗಳ
ಸಿಲುಕಿದನು ಫಡ ಸ್ವಾಮಿದ್ರೋಹಿಗೆ
ಬಲೆಯ ಹಾಯಿಕೊ ಗಂಡುಮಿಾನ
ಗ್ಗಳೆಯ ಗಾಣವ ಕೊಳ್ಳದೆನುತೌಕಿದರು ಬಳಸಿನಲಿ ೧೪

ಧೂಳು ಮುಸುಕಿತು ಸುತ್ತುವಳಯದ
ಲಾಳು ಹೊಕ್ಕುದು ಹೊಯ್ಲು ಹೊದರಿನ
ಬಾಳುಗಿಡಿಗಳ ಖಣಿಖಟಿಲ ಫಲ್ಲಣೆಯ ಗರ್ಗರದ
ಮೇಲುಮೇಲುಬ್ಬೇಳ್ವ ಬೊಬ್ಬೆಯ
ತೂಳುವರೆ ಕಹಳೆಗಳ ಘೋಳಾ
ಘೋಳಿ ಮಸಗಿತು ಭೀಮಸೇನನ ರಥದ ಬಳಸಿನಲಿ ೧೫

ಅಳಲಿಗರಲೇ ಕೌರವಾನುಜ
ರಳುಕದಿರಿದರಲೈ ವಿಘಾತಿಗೆ
ಸಿಲುಕದಿರನೋ ಭೀಮನೆನುತುಬ್ಬಿದರು ನಿನ್ನವರು
ಜಲನಿಧಿಯೊಳುಬ್ಬೆದ್ದ ತೆರೆಯಲಿ
ಮುಳುಗುವುದೆ ಮಂದರವೆನುತ ಕಳ
ವಳಿಸಿದವರೇನರಿಯರೇ ತಮ್ಮವನ ಕೈಗುಣವ ೧೬

ತೆಗಸಬೇಹುದು ಪವನಜನ ಮು
ತ್ತಿಗೆಯನೆನುತುರವಣಿಪ ನಕುಲಾ
ದಿಗಳ ಕಂಡನು ಕರೆದು ಮರುಳಾಡಿದನು ಕಲಿಪಾರ್ಥ
ತೆಗಸಬೇಹುದು ತರಣಿಬಿಂಬವ
ತಗುಳ್ದ ತಿಮಿರವ ನಿಮ್ಮ ಹಂಗಿನ
ನುಗುಳಗಂಡಿಯ ನುಸುಳುಂದಲೆಗನೆ ಮರಳಿ ನೀವೆಂದ ೧೭

ಮಾತು ಹಿಂಚಿತ್ತಿದು ವಿಲಂಬಿಸ
ದಾತ ಮುರಿದನು ಮುತ್ತಿದಿಭಸಂ
ಘಾತವನು ಪಲ್ಲಟಿಸಿ ಕಡಿ ಕೊಚ್ಚಿದನು ತೇರುಗಳ
ಆತು ತಾಗಿದ ರಾವುತರ ಸಂ
ಜಾತಿಯಲಿ ಕಂಡೆನು ಪದಾತಿ
ವ್ರಾತ ಪಾಣಿಗ್ರಹಣವನು ಗೀರ್ವಾಣವಧುಗಳಲಿ ೧೮

ಬಲನೆಡನ ಗದೆ ಖಡುಗದಲಿ ರಿಪು
ಜಲನಿಧಿಯನೀಸಾಡಿದನು ಹೆ
ಬ್ಬಲದ ಹೆಬ್ಬೆಳೆ ಸಾಲಕೊಯ್ಲಿನ ಮೆದೆಗಳೊಟ್ಟಿಲಲಿ
ತಳಕುಗಳ ವರ ರಥ ಹಯದ ಹೊಸ
ಮೆಳೆಯ ಕಡಿತದ ಕರಿಘಟಾಳಿಯ
ಬಲುಮೊರಡಿಗಳ ಸವರಿ ತಳಪಟಮಾಡಿದನು ಭೀಮ ೧೯

ಅಸಿಯಲಿಟ್ಟರೆದಂತೆ ಬಲ ನಿ
ಪ್ಪಸರದಲಿ ನುಗ್ಗಾಯ್ತು ನೀಗಿದ
ರಸುವನೀ ದುಶ್ಶಾಸನನ ನಂಬುಗೆಯ ಪರಿವಾರ
ಬಸಿವ ನೆತ್ತರ ಮೆಯ್ಯ ಕರುಳಿನ
ಕುಸುರಿಗಳ ತಲೆಮಿದುಳ ಮೆತ್ತಿಗೆ
ವಸೆಯ ತೊರಳೆಯ ತೊಂಗಲಲಿ ರಂಜಿಸಿತು ರಣಭೂಮಿ ೨೦

ಹೋರಿ ಹಂಗಿಗರಾದೆವೇ ಪರಿ
ವಾರ ನೆರೆದುದು ನಾಕದಲಿ ತೆಗೆ
ವೀರಕಂಕಣವೇಕೆನುತ ದುರಿಯೋಧನಾನುಜರು
ತೇರ ಸೂತನ ಸೂಚನೆಯ ಚೀ
ತ್ಕಾರ ಪರಿಧಾವನೆಯ ಧೂಳಿಯ
ಲೋರಣದ ಭಾರಣೆಯಲೈದಿದರನಿಲನಂದನನ ೨೧

ಇಂದಲೇ ನೀವ್ ಗದೆಯ ಹಬ್ಬಕೆ
ಬಂದಿರೈ ಲೇಸಾಯ್ತು ನೀವೇ
ನೆಂದಿರೈ ನಿಮ್ಮಣ್ಣದೇವನ ಮುಂದೆ ಭಾಷೆಗಳ
ತಂದಿರೈ ತಳ್ಳಂಕವನು ನವು
ಗೆಂದು ಕೊಡುವಿರಿ ಕೌರವನ ತ
ಮ್ಮಂದಿರೈ ನೀವೆನುತ ಸುಳಿದನು ಸಿಂಹನಾದದಲಿ ೨೨

ಗಿಡಿಗನೆತ್ತಲು ಗಿಣಿಯ ಮರಿಗಳ
ಗಡಣವೆತ್ತಲು ತೋಳನೆತ್ತಲು
ತೊಡಕುವರೆ ತಗರತ್ತಲಿವರಿಗೆ ಗೆಲವು ಸೋಲವನು
ನುಡಿಯಲಮ್ಮೆನು ನಿನ್ನ ಮಕ್ಕಳ
ಮಿಡುಕಿನಂತರವೇನು ಪ್ರಳಯದ
ಸಿಡಿಲ ಬಲುಹೋ ಭೀಮನೋ ನಾವರಿಯೆವಿದನೆಂದ ೨೩

ಥಟ್ಟುಗೆಡಹಿ ಕುಮಾರಕರನರೆ
ಯಟ್ಟಿ ಹೊಯ್ದನು ಕೆಲಬಲದಲಡ
ಗಟ್ಟಿದರನಪ್ಪಳಿಸಿದನು ಚಿಗಿದಾನೆವರಿವರಿದು
ಇಟ್ಟಣಿಸಿ ಹೊಕ್ಕೆಸುವವರ ಹುಡಿ
ಗುಟ್ಟಿದನು ಹೆಣಸಾಲಿನಲಿ ಮಡು
ಗಟ್ಟಿ ನಿಂದುದು ರಕ್ತಜಲ ನರನಾಥ ಕೇಳೆಂದ ೨೪

ಒಂದು ಹಲಗೆಯಲೈದು ಹರಿಬಕೆ
ಬಂದು ಹೊಕ್ಕವರೈದು ಖತಿಯಲಿ
ಹಿಂದ ಕೆಣಕಿದರೆಂಟು ಮಗುಳಿಬ್ಬರನು ಕದನದಲಿ
ಕೊಂದನಿಂತಿಪ್ಪತ್ತು ನಿನ್ನಯ
ನಂದನರು ನೀಗಿದರು ನೆಲನನು
ನಿಂದು ಕರೆದನು ಬಳಿಕ ದುಶ್ಶಾಸನನ ಕಲಿಭೀಮ ೨೫

ಧಾರುಣೀಪತಿ ಕೇಳು ನಿನ್ನ ಕು
ಮಾರರಲಿ ತೊಂಬತ್ತಯೆಂಟರ
ಪಾರುಖಾಣೆಯ ಲೆಕ್ಕ ಸಂದುದು ನಿಮ್ಮ ಚಿತ್ತದಲಿ
ಸಾರಭೂತರಲೇ ಸಮಸ್ತವಿ
ಕಾರಿಗಳೊಳೀ ವಿಶ್ವನೃಪ ಸಂ
ಹಾರರಿಬ್ಬರ ಬೀಯವನು ಮೇಲಿನ್ನು ಕೇಳೆಂದ ೨೬

ಮುರಿದುದಚ್ಚಾಳಚ್ಚುಕುದುರೆಗ
ಳುರುಕುಗೊಂಡುದು ನಿನ್ನವರ ಹೊ
ಕ್ಕಿರಿದು ಹೋಗಾಡಿದರು ತನ್ನ ಸಹೋದರವ್ರಜವ
ಹೊರಗೆ ಕರ್ಣಕೃಪಾದಿಗಳು ಮೈ
ಮರೆವ ಹೊತ್ತಾಯ್ತಿವನ ನೆತ್ತರ
ಸುರಿಯದೆಡೆಯಲಿ ಬಿಡೆನೆನುತ ಪವನಜನು ಗರ್ಜಿಸಿದ ೨೭

ದೊರೆಯ ತಮ್ಮನ ತವಕ ತೋಟಿಗೆ
ತಿರುಗುತದೆ ತಡವೇನು ನೂಕೆನು
ತರಸ ಕೇಳೈ ತನತನಗೆ ದುಶ್ಶಾಸನನ ರಥವ
ಪರಿಹರಿಸಿಕೊಂಡೇರಿತೀ ದಳ
ದುರವಣೆಯ ಸೈರಿಸಿದಡವನೀ
ಶ್ವರನಲೇ ಕಲಿಭೀಮನಲ್ಲದೆ ಧೀರನಾರೆಂದ ೨೮

ನೂಕದಿರಿ ಸಂಘಟಿಸಿ ಹೋಹೋ
ಸಾಕು ಸಾಕಾ ಮೆಚ್ಚಿದೆನು ತಳು
ವೇಕೆ ದುಶ್ಶಾಸನ ವೃಥಾ ನೀ ಹೊತ್ತುಗಳೆವೆಯಲಾ
ನೀ ಕಳೆದುಕೊಳು ಧನುವ ನಮ್ಮ ವಿ
ವೇಕವನು ದಳ ನೋಡುತಿರಲಿ ನಿ
ರಾಕುಳದಲೆಚ್ಚಾಡುವೆವು ನಿಲ್ಲೆಂದನಾ ಭೀಮ ೨೯

ರೂಢಿಸಿದ ಭಟ ನೀನು ಹರಿಬವ
ಬೇಡಿ ತೊಡಕಿದೆ ನಾನು ಖಾಡಾ
ಖಾಡಿಯಲಿ ಸಿಗುರಿಲ್ಲ ತೆಗೆ ಹಂಗೇಕೆ ತೆತ್ತಿಗರ
ನೋಡುತಿರಲೀ ಬಲವೆರಡು ಹೋ
ಗಾಡು ನಮ್ಮನು ಮೇಣು ನಿನ್ನನು
ಸೂಡುದರಿವೆನು ಸತ್ವದಳತೆಯ ಕಾಣಲಹುದೆಂದ ೩೦

ತೊಲಗಿರೈ ಪರಿವಾರ ಬಾಳೆಯ
ತಳಿಯ ಮುರಿವತಿಸಹಸಿ ಗಡ ಮರಿ
ಮೊಲನ ಬೇಟೆಯು ವೀರ ಗಡ ಬಾಣಪ್ರಯೋಗದಲಿ
ಸಲೆ ಮೃಗದ ಸಾಹಸಿಕ ಗಡ ಕು
ಟ್ಮಳಿತ ಕೇತಕಿ ತೀಕ್ಷ್ಣ ಗಡ ನೀ
ವಳವಿಗೊಡದಿರಿ ಎನುತ ನಿನ್ನ ಕುಮಾರನನುವಾದ ೩೧

ಪೂತು ಸುಭಟ ಸುಯೋಧನನ ಸಹ
ಜಾತನಲ್ಲಾ ಮತ್ತೆ ಕೆಲಬರಿ
ಗೀ ತವಕವೀ ಶೌರ್ಯವೀ ಬಲುಹೀಸುದಿಟ್ಟತನ
ಸೋತುದುಂಟೇ ಹೊಳ್ಳುವಾತಿನ
ಹೂತೊಡಬೆ ನಿನಗಿಲ್ಲ ಧೈರ್ಯದ
ಧಾತುವೊಳ್ಳಿತು ಕೊಳ್ಳೆನುತ ತೆಗೆದೆಚ್ಚನಾ ಭೀಮ ೩೨

ಫಡ ಎನುತ ಪವನಜನ ಬಾಣವ
ಕಡಿದು ಕೂರಂಬಿನಲಿ ಭೀಮನ
ಕೆಡೆಯೆಸುತ ಮುರಿಯೆಚ್ಚು ಮಗುಳೆಚ್ಚಂಬ ಹರೆಗಡಿದು
ಎಡೆಯಲೆಚ್ಚಂಬುಗಳನಿಬ್ಬರು
ಕಡಿದರಂಬಂಬುಗಳ ಹೋರಟೆ
ಕಿಡಿಗೆದರೆ ನಿಬ್ಬರದ ಕದನವ ಕಂಡೆನಿಬ್ಬರಲಿ ೩೩

ಸವೆಯೆ ಸರಳೆಚ್ಚಾಡಿದರು ಕಲಿ
ಪವನಸುತ ದುಶ್ಶಾಸನರ ರಣ
ದವಕಿಗರ ಕೋಪಾಗ್ನಿ ಭುಗಿಭುಗಿಲೆಂದುದಡಿಗಡಿಗೆ
ಅವನಿಗಿಳಿಬಿಡು ಧನುವ ತೆಗೆ ಖಡು
ಗವನೆನುತ ರಥದಿಂದ ಹಾಯ್ದರು
ಬವರಿಗರು ಬಿನ್ನಣದಿ ಹೊಯ್ದಾಡಿದರಡಾಯುಧದಿ ೩೪

ಚಾರಣದ ಚಮ್ಮಟದ ಖಡುಗದ
ಪಾರಗದಲುಚ್ಚಟದ ಲುಳಿಯ
ಖ್ಖಾರದೊಡ್ಡಿನ ಹೊಯ್ಲು ಹೋರಟೆಗಳ ಸುರೇಖೆಗಳ
ಸಾರತರಶ್ರಮರೊದಗಿದರು ಜ
ಜ್ಝಾರರುಬ್ಬಣ ಮುರಿಯೆ ಕಾದಿ ಕ
ಠಾರಿಗಳಲೇ ತರುಬಿ ನಿಂದರು ದಂಡೆ ಮಂಡಿಯಲಿ ೩೫

ಲುಳಿಯ ಪಯಪಾಡುಗಳ ದಂಡೆಯ
ಬಳಿಯ ಲೋಹದ ಲವಣಿಗಳ ಮನ
ಲಳಿಯ ಲಾಗಿನ ದೃಷ್ಟಿಯೋರೆಯ ಕೊಂಕಿದವಯವದ
ಬಲಿದ ದಂಡೆಯ ಮರೆಯ ದೇಹದ
ತಳಿತ ಠಾಣದ ಹಜ್ಜೆ ಹಜ್ಜೆಯ
ನೆಲನ ಪಲ್ಲಟದರಿಭಟರು ಕಾದಿದರು ಖಾತಿಯಲಿ ೩೬

ಬಿಡಿಸಿದರೆ ಕುತ್ತುವ ವಿಘಾತಿಯ
ಮಡಮುರಿಯಲೇ ಕಳೆವ ದಂಡೆಯ
ತುಡುಕಿದಡೆ ನೋಡುವ ನಿವಾರಿಸಿ ಜಡಿದು ಝಳಪಿಸುವ
ಪಡಿಮುಖದೊಳಂಘೈಸಿ ಬವರಿಯ
ಲೊಡಲನೊಲೆವ ಕಠಾರಿಕಾರರ
ಬಿಡುಶ್ರಮದ ಬಿನ್ನಣಕೆ ಮಝು ಭಾಪೆಂದುದುಭಯಬಲ ೩೭

ಕಣೆಯ ಕಾಲಾಟದಲಿ ಹಿರಿಯ
ಬ್ಬಣದ ಹೋರಟೆಯಲಿ ಕಠಾರಿಯ
ಕುಣಿಹದಲಿ ಮಸೆಗಾಣದಿದ್ದುದು ನಿನ್ನ ದೇಹದಲಿ
ರಣಮುಖದೊಳಿದು ನಮ್ಮ ಪುಣ್ಯದ
ರಿಣವಿಶೇಷ ಕಣಾ ಎನುತ ರಿಪು
ಗಣಭಯಂಕರ ಭೀಮ ನುಡಿದನು ಕೌರವಾನುಜನ ೩೮

ಸಾಕಿದೇತಕೆ ಮಲ್ಲ ಶ್ರಮದಲಿ
ನೂಕಿನೋಡುವೆವಿನ್ನು ಕೈದುಗ
ಳೇಕೆ ದೃಢಮುಷ್ಟೀ ಪ್ರಹಾರ ಪ್ರಕಟಸತ್ವರಿಗೆ
ಈ ಕುಮಾರಕರೊಳಗೆ ನೀನೇ
ಜೋಕೆಯುಳ್ಳವನಹೆ ನಿಯುದ್ಧ
ವ್ಯಾಕರಣಪಾಂಡಿತ್ಯವೆಮಗುಂಟೆಂದನಾ ಭೀಮ ೩೯

ಏಸನಗ್ಗಿಸಿಕೊಂಬೆ ನಿನಗಿ
ನ್ನೈಸು ಕೈದುಗಳಲ್ಲಿ ಕೃತವ
ಭ್ಯಾಸವಾ ಕೈದುಗಳ ಬಾಯಿಗೆ ನಿನ್ನ ಬೀರುವೆನು
ಏಸು ಬೇಹುದು ಮಲ್ಲತನ ನಿನ
ಗೈಸು ಬಿನ್ನಾಣದಲಿ ನಿನ್ನಯ
ಸೀಸವಾಳವ ಹೊಯ್ವೆನೆಂದನು ನಿನ್ನ ಮಗ ನಗುತ ೪೦

ತರಿಸಿ ಬಿಗಿದರು ಚಲ್ಲಣವ ಠ
ಪ್ಪರವನಳವಡೆಗಟ್ಟಿದರು ಕ
ಸ್ತುರಿಯ ತಿಲಕವನೊಟ್ಟಿದರು ನೊಸಲಿನಲಿ ಮುಡುಹಿನಲಿ
ಕರತಳವ ಮಾರುದ್ದಿ ಭುಜದಲಿ
ಶಿರದಲಂದಕ್ಕಡದ ಮಣ್ಣನು
ಬೆರಳಲುಂದುರಿಚಿ ಬಾಳುಗೆಂದರು ನೆನೆದು ನಿಂಬಜೆಯ ೪೧

ಸೂಳವಿಸಿದರು ಭುಜಶಿಖರ ನಿ
ಸ್ಸಾಳವನು ನೆಲಕುಣಿಯೆ ದಿಕ್ಕಿನ
ಮೂಲೆ ಬಿರಿಯೆ ಪಯೋಧಿಗಳಲಿ ಪಯೋಧಿ ಪಲ್ಲಟಿಸೆ
ಘೀಳಿಡಲು ಕಿವಿಗಳಲಿ ಸೇನಾ
ಜಾಳವೆರಡರೊಳುಭಯದಿಗು ಶು
ಡಾಲ ಕೈಯಿಕ್ಕುವವೊಲಿವರೊತ್ತಿದರು ತೋಳ್ಗಳಲಿ ೪೨

ತೆಗೆದು ಗಳಹತ್ತದಲಿ ಕೊರಳನು
ಬಿಗಿಯೆ ಬಿಡಿಸುವ ತೋರಹತ್ತದ
ಹೊಗುತೆಯನು ವಂಚಿಸುವ ತಳಹತ್ತದಲಿ ತವಕಿಸುವ
ಲಗಡಿಯಲಿ ಲಟಕಟಿಸುವಂತರ
ಲಗಡಿಯಲಿ ಲಾಲಿಸುವ ಡೊಕ್ಕರ
ಗಳ ಬಿಗುಹಿನ ಬಿಡೆಯ ಬಿನ್ನಾಣದಲಿ ಹೆಣಗಿದರು ೪೩

ಘಾಯವೇ ಜಗಜಟ್ಟಿ ಮಲ್ಲರಿ
ಗಾಯಸವು ಜೊಕ್ಕೆಯವು ಬಿಡುವಡು
ಪಾಯ ಕೇಳೆಂದೊದೆದು ದಂಡೆಯನೊಡ್ಡಿದನು ಭೀಮ
ರಾಯ ಕೇಳೈ ಸಿಡಿಲ ತಿವಿಗುಳ
ತಾಯಿಮನೆಯೋ ಪವನಜನ ಬಲು
ಘಾಯವೋ ಘನ ತೋರಹತ್ತರು ತಿವಿದರುರವಣಿಸಿ ೪೪

ಮೈಗೆ ಮೇಣದ ಹಾಹೆ ಸರಿ ಮು
ಗೈಗೆ ಮೇರುವಿನಿರವು ದೊರೆ ಹೊರ
ಕೈಗೆ ವಜ್ರದ ಹೊಯ್ಲು ಪಡಿಘಟ್ಟಣೆ ಮಹಾದೇವ
ಕೈಗಡಿಯ ಪಟುಭಟರೊಳಗೆ ಬಲು
ಗೈಗಳೆಂದಮರಾಳಿ ಹೊಗಳಲು
ಹೊಯ್ಗುಳಿನ ಹೊಸನಾಟಕವನಭಿನಯಿಸಿ ಕಾದಿದರು ೪೫

ಒಂದು ಭೀಮನ ಮೇಲೆ ನಿನ್ನಯ
ನಂದನನ ಮೇಲೆರಡು ಕೊಂತೀ
ನಂದನಗೆ ನಾಲ್ಕೆಂಟು ನಿನ್ನ ಕುಮಾರನಂಗದಲಿ
ಸಂದಣಿಸಿದವು ಘಾಯ ಘಾಯದ
ಮುಂದೆ ಹೊದರೆದ್ದವು ಸುಘಾಯದ
ಬಂದಿಯಲಿ ಸಿಲುಕಿತ್ತು ನಿನ್ನ ಕುಮಾರನಂಘವಣೆ ೪೬

ತ್ರಾಣವೆಳದಾಯ್ತಖಿಳಶೌರ್ಯದ
ಚೂಣಿ ಮುರಿದುದು ಘರ್ಮಜಲವು
ಗ್ರಾಣಿಸಿತು ಭುಜಬಲವನಂಕುರಿಸಿತ್ತು ರಣಭೀತಿ
ಪ್ರಾಣಪವನನ ಬೀಡುಬಿಟ್ಟುದು
ಗೋಣಿನಲಿ ಗರುವಾಯಿಗೆಡೆ ರಣ
ಹೂಣಿಗನು ಜವಗುಂದಿದನು ದುಶ್ಶಾಸನನು ಬಳಿಕ ೪೭

ಹೊಯ್ದು ತುರುಬನು ಹಿಡಿದು ತಡೆಗಾ
ಲ್ವೊಯ್ದು ಕೆಡಹಿದನಸಬಡಿದು ಹೊಯ್
ಹೊಯ್ದು ಬಿಡೆ ಖೊಪ್ಪರಿಸಿ ಡೊಕ್ಕರವಿಕ್ಕಿ ರಾಘೆಯಲಿ
ಹಾಯ್ದವಾಲಿಗಳುಸುರ ಪಾಳೆಯ
ವೆಯ್ದೆ ಬಿಟ್ಟುದು ಮೂಗಿನಲಿ ಕೈ
ಗೆಯ್ದು ತುಡುಕಿದ ಶೋಣಿತಕೆ ಲಟಕಟಿಸಿದನು ಭೀಮ ೪೮

ಹರಿ ಮದೋತ್ಕಟ ದಂತಿಯನು ಡೊ
ಕ್ಕರಿಸಿ ಡಾವರಿಸುವವೊಲಾ ನರ
ಹರಿ ಹಿರಣ್ಯಕಶಿಪುವನಂಕದ ಮೇಲೆ ತೆಗೆವಂತೆ
ಅರಸ ನಿನ್ನ ಕುಮಾರಕನ ನಡು
ತರದೊಳಗೆ ಕೆಡಹಿದನು ಕೊಬ್ಬಿದ
ಮರುಷ ಹರುಷ ನಿಯುದ್ಧದಕ್ಕಡನಾದನಾ ಭೀಮ ೪೯

ಸಿಕ್ಕಿದೆಯಲಾ ಸ್ವಾಮಿದ್ರೋಹಿಯೆ
ಸೊಕ್ಕಿದೆಯಲಾ ಹಿಂದೆ ಜೂಜಿನ
ಲಕ್ಕಜವ ಮಾಡಿದೆಯಲಾ ಮಾನಿನಿಯ ಮುಡಿವಿಡಿದು
ಚುಕ್ಕಿಗಳಲಾ ನಿನ್ನವರು ಕೈ
ಯಿಕ್ಕ ಹೇಳಾ ನಿನ್ನನೊಬ್ಬನ
ನಿಕ್ಕಿ ನೋಡಿದರಕಟೆನುತ ಮೂದಲಿಸಿದನು ಭೀಮ ೫೦

ಉಕ್ಕಿದುದು ತನಿಹರುಷ ಮೈಯೊಳ
ಗೊಕ್ಕವಾ ಪುಳಕಾಂಬು ಕಂಗಳು
ಮುಕ್ಕುಳಿಸಿದವು ಮುನ್ನ ದುಶ್ಶಾಸನನ ಶೋಣಿತವ
ಬಿಕ್ಕುವಹಿತನನಡಿಗಡಿಗೆ ಎವೆ
ಯಿಕ್ಕದೀಕ್ಷಿಸಿ ತಣಿಯದಿನ್ನಕ
ಸಿಕ್ಕಿ ಸಿಡಿಮಿಡಿಗೊಂಬ ರೋಷವೆ ರಾಜ್ಯಮಾಡೆಂದ ೫೧

ಎತ್ತಿ ಕಳೆದಿರಿ ವನಕೆ ನಾವ್ ನಿ
ಮ್ಮೆತ್ತುಗಳಲಾ ಬೀದಿಯಲಿ ಬೆಂ
ಬತ್ತಿ ಕೊಂಕಿನ ಬೆರಳಲೇಡಿಸಿ ಬಯ್ದು ಭಂಗಿಸಿದೈ
ತೊತ್ತಲಾ ಪಾಂಚಾಲೆ ನಾವ್ ನಿ
ಮ್ಮೆತ್ತುಗಳಲಾ ಹಿಂದೆ ಕಿಚ್ಚಿನ
ತಂತ್ತು ವಿಷದುಬ್ಬಟೆಗಳನು ನೆನೆಯೆಂದನಾ ಭೀಮ ೫೨

ಎರಗಿದನು ಕಟವಾಯ ಹಲುಗಳ
ಮುರಿಯಲುಗುರಲಿ ಹೊಯ್ದು ಹೃದಯವ
ನುರೆ ಬಗಿದು ಮೊಗೆಮೊಗೆದು ರಕ್ತವ ಕುಡಿತೆಕುಡಿತೆಯಲಿ
ಸುರಿಸುರಿದು ಸುರಿದಡಿಗಡಿಗೆ ಚ
ಪ್ಪರಿದು ಚಪ್ಪರಿದಿದರ ಮಧುರಕೆ
ನೆರೆವವೇ ಸುಧೆಯಿಕ್ಷುರಸಗಿಸವೆಂದನಾ ಭೀಮ ೫೩

ಆಡಿದುದು ಹುಸಿಯಲ್ಲ ನೀ ಸವಿ
ನೋಡು ಕರ್ಣನರೇಂದ್ರ ಕೌರವ
ನೋಡು ಸವಿಯನು ಶಕುನಿ ಕೃಪಕೃತವರ್ಮ ಗುರುಸುತರು
ನೋಡಿರೈ ಹೇವರಿಸುವರೆ ಕೈ
ಮಾಡಿರೈ ನಿಮ್ಮಾತನಳಿವನು
ನೋಡುತಿಹುದೇ ನಿಮಗೆ ನೀತಿಯೆ ಎಂದನಾ ಭೀಮ ೫೪

ಬಿಡಿಸಲಾಗದೆ ಕೈದುಕಾತಿಯ
ರಡಬಳವನೀ ಹುಲಿಯ ಬಾಯಲಿ
ಕೆಡವಿ ಕಳೆದಿರಲಾ ಸುಯೋಧನ ಕರ್ಣ ಗುರುಸುತರು
ಸುಡಲಿ ನಿಮ್ಮನು ಮೊಲೆಗಳಿಲ್ಲದ
ಕಡುಮುಹುಳಿ ನಿಮಗೇಕೆ ನಿಮ್ಮನು
ನುಡಿಸುವವರಾವಲ್ಲೆನುತ ಮದವೇರಿದನು ಭೀಮ ೫೫

ಎಲೆಲೆ ಕೌರವ ಮೋಹರದ ಮುಂ
ಡಳಿಕರಿರ ದುಶ್ಶಾಸನನ ತೊ
ಟ್ಟುಳಿಕೆಗಾಂತಿದೆ ಹರಣವಕಟಾ ಕಾಯಲೆಳಸಿರಲಾ
ಸಲಹಿದವನೊಡಹುಟ್ಟಿದೀತನ
ಕೊಲುವೆಡೆಗೆ ಮತವೇ ಮಹೀಶರ
ಕುಲಕೆ ಪಂಥವಿದೇ ಎನುತ ಮೂದಲಿಸಿದನು ಭೀಮ ೫೬

ಏನ ಹೇಳುವೆನರಸ ಕೌರವ
ಸೇನೆ ಗರಹೊಡೆದಂತೆ ಬಹಳಾಂ
ಭೋನಿಧಿಯಲದ್ದಂತೆ ಬೆಗಡಿನ ಸೊಗಡ ಸೆರೆವಿಡಿದು
ಮೋನದಲಿ ಮನವಳುಕಿ ಯೋಗ
ಧ್ಯಾನಪರರಾದಂತೆ ಚಿತ್ತ
ಗ್ಲಾನಿಯೊಳಗೆಲೆಮಿಡುಕದಿದ್ದುದು ನಿನ್ನ ಪರಿವಾರ ೫೭

ಅಡಿಗಡಿಗೆ ಕದುಕಿರಿದು ರಕುತವ
ಕುಡಿತೆಯಲಿ ಕುಡಿಕುಡಿದು ಬೆರಳಲಿ
ಮಿಡಿದು ಕದನಸ್ಥಾನದೇವತೆಯರಿಗೆ ಕೈಕೊಳಿಸಿ
ಕುಡಿದು ಮಿಕ್ಕುದನಖಿಳಭೂತಕೆ
ಬಡಿಸಿ ಚಪ್ಪರಿದಾರಿ ಬೊಬ್ಬಿರಿ
ದೊಡನೊಡನೆ ನೊರೆನೆತ್ತರೋಕುಳಿಯಾಡಿದನು ಭೀಮ ೫೮

ಎಲವೆಲವೊ ಗುರುಸೂನು ಭೂಮುಂ
ಡಲದೊಳಗೆ ನಿಮ್ಮಯ್ಯನೂ ನೀ
ನುಳಿಯೆ ಭಟರಿಲ್ಲೆಂಬ ಗರ್ವದ ಗಿರಿಯನೇರಿಹಿರಿ
ನಿಲುಕಲಾಗದೆ ಕೌರವಾನುಜ
ನುಳಿವು ಸೊಗಸದೆ ನಿನಗೆ ಬಿಲುವಿಡಿ
ದುಳುಹಿರೈ ಲೇಸಹುದೆನುತ ಮೂದಲಿಸಿದನು ಭೀಮ ೫೯

ಎಲೆ ಕೃಪಾಚಾರಿಯ ಸುಯೋಧನ
ನೊಳಗೆ ಸೇರುವೆ ಹಿರಿದು ನಿಮಗೀ
ಖಳನ ಕೊಲೆಯನು ನೀವು ಮನಗೊಟ್ಟೊಲಿದು ನೋಡುವರೆ
ಎಲೆ ಶಕುನಿಯೆಲೆ ಶಲ್ಯ ಎಲೆ ಬಾ
ಹಿಲಿಕ ಕೃತವರ್ಮಾದಿ ವೀರರು
ಸೆಳೆದುಕೊಳಿ ದುಶ್ಶಾಸನನನೆನುತೊರಲಿದನು ಭೀಮ ೬೦

ಪತಿಗೆ ಮಲೆವರಗಂಡನಾಳ್ದಗೆ
ಹಿತವ ಕೌರವಕುಲಕೆ ಕಣು ಗತಿ
ಮತಿಯೆನಿಸಿ ನೀ ಕರ್ಣನೆಂಬುದು ಸಕಲಜನಜನಿತ
ಪತಿಯ ಸಹಸಂಭವನ ಮರಣ
ವ್ಯತಿಕರವ ನೋಡಿದಡೆ ದುಷ್ಕೀ
ರಿತಿಯ ಮೊಳೆ ಹೊಮ್ಮುವವಲೇ ರವಿಸುತನೆ ಕೇಳೆಂದ ೬೧

ಕರೆದು ಮೂದಲಿಸಿದರೆ ರಣಭೀ
ಕರರು ಮರಳುವರವರಿಗೆತ್ತಿದ
ಬಿರುದಿನಗ್ಗದವೀರ ನೋಡುತ್ತಿಹರೆ ಕಲಿಕರ್ಣ
ಹರಣವಿದೆ ದುಶ್ಶಾಸನನ ತೆಗೆ
ಬರಸೆಳೆವ ಬಲುಹುಳ್ಳಡೆನುತು
ಬ್ಬರಿಸಿ ಗಜರಿನ ಗರುವನೊರಲಿದನಹಿತವೀರರಿಗೆ ೬೨

ಆಕೆವಾಳರು ಕರ್ಣಗುರುಸುತ
ರೀ ಕೃಪಾಚಾರಿಯರು ತಾವೇ
ಕೈಕವೀರರು ನಿನ್ನನೊಬ್ಬನನೊಪ್ಪುಗೊಟ್ಟರಲಾ
ಏಕೆ ತರುಬಿದಿರಿವರನಾಹವ
ಭೀಕರರನವಿವೇಕಿಗಳು ಇವ
ರೇಕೆ ನೀವೇಕೆಂದು ದುಶ್ಶಾಸನನ ನೋಡಿದನು ೬೩

ಮರಣ ನೆರೆಹೊರೆಯಾಯ್ತು ನಿನ್ನಯ
ಹರಣವೆನ್ನಂಗಯ್ಯಲಿದೆ ನಿ
ಮ್ಮರಸನನು ಕರಸೆಲವೊ ಕಾದಿಸು ನಿನ್ನ ರಕ್ಷಿಸಲಿ
ಅರಿಬಲದೊಳಿದಿರಿಲ್ಲ ನಿಜಮೋ
ಹರದೊಳಗೆ ಮಿಡುಕುಳ್ಳ ವೀರರು
ಮರಳಿಚಲಿ ನಿನ್ನುವನೆನುತ ನೋಡಿದನು ತನ್ನವರ ೬೪

ಎಲವೊ ಧೃಷ್ಟದ್ಯುಮ್ನ ಸಾತ್ಯಕಿ
ಎಲೆ ಶಿಖಂಡಿಪ್ರಮುಖನಾಯಕ
ರಳುಕದಿಹ ಮನವುಳ್ಳಡಿದಿರಾಗಿವನ ಸಲಹುವುದು
ಹಲಬರಲಿ ಫಲವೇನು ದಾನವ
ಕುಲ ದಿಶಾಪಟಕೃಷ್ಣ ಮುನಿದಡೆ
ಕಳೆದುಕೊಳು ಕೌಮೋದಕಿಯನೆಂದೊದರಿದನು ಭೀಮ ೬೫

ಕೇಳು ಫಲುಗುಣ ಲೋಕಮೂರರೊ
ಳಾಳು ನೀನೆಂದೆಂಬ ಗರ್ವವ
ಪಾಲಿಸುವೊಡಿದಿರಾಗು ತೊಡು ಗಾಂಡಿವದಲಂಬುಗಳ
ಆಳುತನ ನಿನಗುಂಟ್ಕೊಡಹಿತನ
ಪಾಲಿಸುವೊಡೇಳೆಂದೆನಲು ಜಯ
ಲೋಲ ಸುಗತಿಯೊಳಿಳಿದನರ್ಜುನನಮಳಮಣಿರಥವ ೬೬

ಅಹುದಹುದು ತಪ್ಪೇನು ತಪ್ಪೇ
ನಹಿತದುಶ್ಶಾಸನನ ಸಲಹುವೆ
ನಹಿತಬಲವೆನಗನಿಲಸುತನೆನುತೈದೆ ಬರೆ ಕಂಡು
ಬಹಳ ಭೀತಿಯೊಳಸುರರಿಪು ಸ
ನ್ನಿಹಿತ ಚಾಪವ ಹಿಡಿದು ಮನದು
ಮ್ಮಹವ ಕೆಡಿಸಿ ಕಿರೀಟಿಯನು ನಿಲಿಸಿದನು ರಥದೊಳಗೆ ೬೭

ಅಹುದು ಭೀಮನ ಗೆಲುವ ಭಟನೀ
ನಹೆಯಲೇ ನಾವಂಜುವೆವು ನಿ
ರ್ವಹಿಸಬಹುದೇ ಕಾಲರುದ್ರನ ಕೆಣಕಿ ಕದನದಲಿ
ಸಹಜವಿದು ಸಾಕ್ಷಾದುಮಾಪತಿ
ಯುಹ ಕಣಾ ಪವನಜನ ನೋಡಲು
ಬಹಡೆ ನೋಡೆಂದಸುರರಿಪು ನುಡಿದನು ಧನಂಜಯಗೆ ೬೮

ಕಂಡನರ್ಜುನ ತ್ರಿಪುರದಹನದ
ಖಂಡಪರಶುವೊಲಿರ್ದ ಭೀಮನ
ದಂಡಿಯನು ಥಟ್ಟೈಸಿ ಭೂತಗಳೆಡಬಲದೊಳಿರಲು
ಚಂಡಬಲನಹನೈ ವೃಕೋದರ
ಗಂಡುಗಲಿಗಿದಿರಾವನೆನುತಾ
ಖಂಡಲಾತ್ಮಜನೆರಗಿದನು ಮುರವೈರಿಯಂಘ್ರಿಯಲಿ ೬೯

ಉಭಯವೀರರ ನೋಡಿ ಸಂಗರ
ರಭಸದಲಿ ಮೂದಲಿಸಿ ಚಾಪ
ಪ್ರಭವ ಚಪಲರ ಚದುರುಗೆಡಿಸಿದ ಭುಜಬಲೋನ್ನತಿಯ
ಸಭೆಯೊಳಾದವಮಾನದಹನ
ಪ್ರಭೆಯ ನಂದಿಸಲಾಯ್ತಲಾ ರಿಪು
ಸುಭಟನುರವೆಂಬಭ್ರ ಸಂಭವ ರುಧಿರಜಲವೆಂದ ೭೦

ಕೆಡೆದ ಹಗೆಯೊರಲಿನಲಿ ಕಿವಿ ಎಡೆ
ಯುಡುಗದೀಕ್ಷಿಸಿ ಕಂಗಳಾ ಖಳ
ನೊಡಲ ಕಡಿಗೆಡಹಿನಲಿ ಮೈ ರಿಪುಮಾಂಸಗಂಧದಲಿ
ಬಿಡದೆ ನಾಸಿಕ ಖಳನ ರಕುತವ
ಕುಡಿದು ನಾಲಗೆ ಸೊಗಸೆ ಸೊಕ್ಕಿದ
ನೊಡನೊಡನೆ ಪಂಚೇಂದ್ರಿಯ ಪ್ರೀತಿಯಲಿ ಕಲಿಭೀಮ ೭೧

ಘನ ಪರಾಕ್ರಮಿ ಭೀಮಸೇನಗೆ
ವಿನುತ ಭುಜಗೇಂದ್ರಂಗೆ ದುಶ್ಶಾ
ಸನನ ಜೀವಾನಿಳನ ಪಾರಣೆ ಸಮರಭೂಮಿಯಲಿ
ಮುನಿವನಾರಿವನೊಳಗೆ ಕರುಳಿನ
ಘನ ನಿಶಾಕರಬಿಂಬದುದಯದೊ
ಳನಿಲಜನ ಮುಖ ಕುಮುದ ನಸುನಗೆಯೆಸಳು ಪಸರಿಸಿತು ೭೨

ಉಕ್ಕಿದುದು ಕಡುಗೋಪ ರಕುತದ
ಸೊಕ್ಕಿನಲಿ ಸೊಗಡೇರಿ ಕಂಗಳ
ಲುಕ್ಕಿದುದು ಕಡುಗೆಂಪು ತೊದಳಿನ ಗಜರು ಘಾಡಿಸಿತು
ಮಿಕ್ಕ ರಕುತವ ಮೊಗೆದು ಬದಿಗಳೊ
ಳೊಕ್ಕ ಕರುಳ್ಗಳನಾಯ್ದು ಮೂಲೆಗ
ಳೊಕ್ಕಿನಲಿ ಕೈಯಿಕ್ಕಿ ರಿಂಗಣಗುಣಿದನಾ ಭೀಮ ೭೩

ಬಳಿಕ ಪರಿತೋಷದಲಿ ಮಾರುತಿ
ಲಲನೆಯಲ್ಲಿಗೆ ಕಳುಹಿದನು ತ
ನ್ನೊಲವಿನಾಹವವಾದುದೈತಹುದೆನಲು ಬೇಗದಲಿ
ನಳಿನಮುಖಿ ನಲವೇರಿ ಮೇಳದ
ಕೆಳದಿಯರು ಕೈಗೊಡಲು ನೇವುರ
ದೆಳಮೊಳಗು ಮೋಹಿಸಲು ಮಾನಿನಿ ಬಂದಳಾಯೆಡೆಗೆ ೭೪

ಮನಸಿಜನ ಮದದಾನೆ ಮೊಗಸಿದ
ಳನುವರಕೆ ಮಝು ಮಾಯೆ ಮೆಚ್ಚಿನ
ಮನದ ಕಡುಹಿನ ಖಾತಿಯೆಂತುಟೊ ಕೌರವನ ಮೇಲೆ
ಎನಲು ದಿವಿಜರು ಝಣಝಣಾಯಿತ
ನಿನದದುರವಣೆ ಮಿಗಲು ಘನಸಂ
ಜನಿತ ಪದತಳ ಚಲನಕೃತಿಯಿಂದೈದಿದಳು ರಣವ ೭೫

ಅರರೆ ಭೀಮನ ವಿಜಯಲಕ್ಷ್ಮಿಯ
ಬರವೊ ಕೌರವನೃಪನ ಮರಣಾಂ
ಕುರವ ಸೂಚಿಸುವಾತುರಶ್ರೀಸತಿಯ ಸಂಭ್ರಮವೊ
ಅರಿಭಟರಿಗದ್ಭುತವೆನಲು ಭೀ
ಕರರು ದುರ್ಧರವೆಂದೆನಲು ಪಂ
ಕರುಹಮುಖಿ ನಡೆತಂದಳಾ ಪವಮಾನಜನ ಹೊರೆಗೆ ೭೬

ಬರುತ ಕಂಡಳು ಭೀಮಸೇನನ
ಧುರಪರಾಕ್ರಮವಪ್ಪಿ ಭುಗಿಲೆಂ
ದರಿ ಭಯಂಕರ ರೌದ್ರರೂಪಿನೊಳಿರಲು ಬರಲಂಜಿ
ತಿರುಗೆ ಕಂಡನು ಪವನಸುತ ಪಂ
ಕರುಹಮುಖಿಯನು ಕರೆದು ನಿನ್ನಯ
ಭರದ ಬಯಕೆಯಿದಾಯ್ತು ದಿಟ ನೋಡೆಂದು ತೋರಿಸಿದ ೭೭

ಆರಿವನು ನೀ ಕೊಟ್ಟ ಭಾಷೆಯ
ಕಾರಣಿಕ ಖಳರೊಳಗಿದಾವನು
ವೀರ ದುಶ್ಶಾಸನ ಕಣಾ ಅಂತಾದಡಾಯ್ತೆನುತ
ಸಾರಿದಳು ಸರಸಿಜವದನೆ ಭ
ರ್ತಾರನನು ನಸುನಗುತ ಚರಣದ
ಚಾರು ನೇವುರವುಲಿಯಲೊದೆದಳು ಖಳನ ಮಸ್ತಕವ ೭೮

ನುಡಿವುದರಿದೇ ನುಡಿದ ಭಾಷೆಯ
ಕಡೆತನಕ ಪೂರೈಸಿ ಮಾಡುವ
ಕಡುಗಲಿಗಳಾರುಂಟು ಜಗದೊಳು ನಿನ್ನ ಹೋಲುವರು
ಮೃಡಪರಾಕ್ರಮಿ ನಿನ್ನ ಹೋಲುವ
ಮಡದಿಯರು ನಿನ್ನಂದದೊಡೆಯರ
ಪಡೆವುದೇ ಪರಮೈಕಸೌಖ್ಯವಿದೆಂದಳಿಂದುಮುಖಿ ೭೯

ತರುಣಿ ಕುಳ್ಳಿರು ಸ್ವಾಮಿದ್ರೋಹಿಯ
ಕರುಳು ಮುಡಿ ಬಾ ನಿನ್ನ ಖಾತಿಯ
ಪರಿಹರಿಸುವೆನು ಖಳನ ರುಧಿರಸ್ನಾನಕೆಳಸುವರೆ
ಸರಸಿಜಾನನೆ ಕೊಳ್ಳೆನುತ ಖಳ
ನುರವನಿಬ್ಬಗಿಮಾಡಿ ಕುಡಿತೆಯ
ಲರುಣಜಲವನು ಮೊಗೆದು ಮಾನಿನಿಗಿತ್ತನಾ ಭೀಮ ೮೦

ಶೋಣಿತಾಂಬುವಿನಿಂದ ತರುಣಿಯ
ವೇಣಿಯನು ನಾದಿದನು ದಂತ
ಶ್ರೇಣಿಯಲಿ ಬಾಚಿದನು ಬೈತಲೆದೆಗೆದು ಚೆಲುವಿನಲಿ
ರಾಣಿ ಹುಸಿಯದೆ ಹೇಳು ಹೇಳೆ
ನ್ನಾಣೆ ಸೊಗಸೇ ಖಳನ ದಂತ
ಶ್ರೇಣಿ ತವೆ ಪಾವನವೆಯೆಂದನು ಪವನಸುತ ನಗುತ ೮೧

ಮುಡಿಗೆ ಹಾಯ್ದುವನುದರರಕ್ತವ
ತೊಡೆದು ಕಬರಿಯ ಕಟ್ಟಿ ಕಟ್ಟುವೆ
ನುಡಿಗೆಯಳಿದನ ಚರ್ಮವನು ನೀನುಡಿಸಲುಟ್ಟಪೆನು
ಎಡೆಯಲೊಯ್ಯಾರದಲಿ ಕಟ್ಟೆನು
ಮುಡಿಯ ಮಡಿಯುಡೆನೆಂಬ ತೇಜದ
ನುಡಿದ ನುಡಿ ಸಲೆ ಸಂದುದೇ ತನ್ನಾಣೆ ಹೇಳೆಂದ ೮೨

ಖಳನ ತೆಳುದೊಗಲುಗಿದು ವಾಸ
ಚ್ಛಲವ ಸಲಿಸಿದನವ ಜಠರದೊ
ಳೊಳಗರುಳನುಗಿದಬುಜವದನೆಯ ಮುಡಿಗೆ ಮುಡಿಸಿದನು
ತಳುಕಿದನು ಖಳನುರದ ರಕ್ತದ
ತಿಳಕವನು ರಚಿಸಿದನು ಹರುಷದೊ
ಳುಲಿದು ಕೀಚಕವೈರಿ ನೋಡಿದನೊಲಿದು ನಿಜಸತಿಯ ೮೩

ಪಸರಿಸಿದ ಪರಿವಾರ ಶರಧಿಯ
ಮುಸಕ ಮುಸುಳಿತು ತೊಡೆಯುಲಡಗೆಡೆ
ದ ಸುಹೃದನ ದರುಶನದೊಳಗೆ ಮುಸಗಿದವು ಮುಡುಹುಗಳು
ಶಶಿವದನೆಯುತ್ಸಾಹವತಿ ಥಾ
ಳಿಸಿತು ಭೀಮನಹರುಷಜಲನಿಧಿ
ವಿಸಟವರಿದುದು ಕೇಳು ಜನಮೇಜಯ ಮಹೀಪಾಲ ೮೪

ಎಡದ ತೊಡೆಯಲಿ ಮಡದಿ ಬಲುವಗೆ
ಯೊಡಲು ಬಲವಂಕದಲಿ ನೆಗಹಿದ
ಕುಡಿವೆರಳ ನಿಡುಗರುಳ ಮಾಲೆಯ ರೌದ್ರರಚನೆಯಲಿ
ಕಡುಮನದ ಖತಿಗಾರ ಭೀಮನ
ಕಡುಹು ಹೋಲುವೆಯಾಯ್ತು ಕಂಭದೊ
ಳೊಡೆದು ಮೂಡಿದ ಮೃಗದ ಮೊಗದ ಮಹಾಸುರಾಂತಕನ ೮೫

ಕೆಲದ ತಲೆಯದ್ರಿಗಳ ಮೂಳೆಯ
ಹೊಳೆವ ಸಾಲಿನ ಸುಂಟಗೆಯ ತೊಂ
ಗಲಿನ ತೋರಣದೊಟ್ಟಿಲಟ್ಟೆಯ ಕರುಳ ಮಾಲೆಗಳ
ತ್ರಿಳಿದ ರಕುತದ ಕೊಳನ ಘನಕೊಳು
ಗುಳದ ತೋಪಿನ ನಡುವೆ ಮಾರುತಿ
ಲಲನೆಸಹಿತಾಡಿದನು ಶೋಣಿತವಾರಿಯೋಕುಳಿಯ ೮೬

ಕೊಳಂಗುಳದ ಜಯಲಕ್ಷ್ಮಿಗಾಯಿತು
ಚಲನಸುತನಲಿ ಮದುವೆಯೆನೆ ಮಂ
ಗಳಮುಹೂರ್ತಕದೊಳಗೆ ಮುಳುಗಿದ ಘಳಿಗೆವಟ್ಟಲೆನೆ
ತಲೆ ಕಪಾಲದ ಸಾಲಶೋಣಿತ
ಜಲದಲಂದೊಪ್ಪಿದವು ರಣದೊಳು
ಕಳದೊಳದ್ಭುತರಚನೆ ಮಿಗೆ ಸೌರಂಭ ರಂಜಿಸಿತು ೮೭

ಉಡಿದು ಕೆಡೆದ ಸಿತಾತಪತ್ರದ
ನಡುವೆ ಹರಿಸಾಲಿನ ಕಪಾಲದ
ಗಡಣವಿರೆ ಚೆಲುವಾಯ್ತು ಜನಮೇಜಯಮಹೀಪಾಲ
ಅಡಗನಂತಕಗಗಲ ತಂದುಣ
ಬಡಿಸಲಿಕ್ಕಿದ ತಳಿಗೆಯೊಳು ಸಂ
ಗಡಿಸಿದವು ಕೆಲವಟ್ಟಲೆನೆ ರಂಜಿಸಿತು ರಣಭೂಮಿ ೮೮

ಸರಳ ತಂದಿಹಿಳಂಕಿನಲಿ ಸಬಳದ
ಸುರಗಿಗಳ ಸೂನಗಿಯ ಬಂಡಿಯ
ಶರಗಳಲಿ ಸಿಲುಕಿರ್ದ ಸುಭಟರ ಕಡಿಕು ಮೆರೆದಿರಲು
ಅರರೆ ಜವನಂಗಡಿಯೊಳಿಕ್ಕಿದ
ತರತರದೊಳಿಹ ಪಸರವೆನೆ ಸಿಂ
ಗರಿಸಿತೈ ರಣಭೂಮಿ ಜನಮೇಜಯ ಮಹೀಪಾಲ ೮೯

ಸಿಡಿದ ಕಣ್ಣಾಲಿಗಳು ಜವನಂ
ಗಡಿಯ ನೀಲದ ಹಸರದಂತಿರ
ಲಡಗು ಮೆರೆದುದು ಸೂನೆಗಾರರ ಹಸರದಂದದಲಿ
ಹೊಡೆಗೆಡೆದ ಗಜದಟ್ಟೆ ರಕುತದ
ಕಡಲೊಳದ್ದವು ಬೀತರಸುಗಳ
ಪಡಗು ಜವಲೋಕಕ್ಕೆ ಜಂಗುಳಿಸಿರ್ದುವೆಂಬಂತೆ ೯೦

ಬಂದ ತೊರೆಗಳ ಕುಡಿದೆನತಿ ಥಗೆ
ಯಿಂದ ಸಕಲ ಸರೋರುಹಾಂಬುವ
ನೊಂದೆ ಶ್ವಾಸದಲೀಂಟಿದೆನು ಶಂಕಿಸದು ಕೋಪಾಗ್ನಿ
ಇಂದು ದುಶ್ಶಾಸನನ ಶೋಣಿತ
ದೊಂದು ಕುಡಿತೆಯಲಾ ಮಹಾಶಿಖಿ
ನಂದಿತೇನಿದು ಚಿತ್ರವಲ್ಲಾ ಸೂತ ಹೇಳೆಂದ ೯೧

ಇವನ ನೆತ್ತರ ಕುಡಿವ ರಿಪುಕೌ
ರವರ ನೂರ್ವರ ಕಡಿವ ಭಾಷೆಗ
ಳೆವಗೆ ಪೂರಾಯವು ಸುಯೋಧನಹರಣವೊಂದುಳಿಯೆ
ಅವನಿ ಜಳ ಶಿಖಿ ಪವನ ಪುಷ್ಕರ
ದಿವಿಜ ದನುಜೋರಗಮುಖಾಖಿಳ
ಭುವನಜನ ನೀವ್ ಕೇಳಿಯೆಂದನು ಭೀಮ ಮೊಗನೆಗಹಿ ೯೨

ಮಂಡದಿಯನು ಕಳುಹಿದನು ಕೆಳದಿಯ
ರೊಡನೆ ನಡೆತರೆ ನಾಕುಕಡೆಯಲಿ
ಹಿಡಿದ ಜವನಿಕೆಗಳಲಿ ಜಲರುಹವದನೆ ಗಮಿಸಿದಳು
ತುಡುಕಿ ವಾಮಾಂಘ್ರಿಯಲಿ ಹಗೆಯನು
ಮಡದಲೊದೆದನು ಬಳಿಕ ಕೌರವ
ಪಡೆಯ ಪವನಜ ಕೊಟ್ಟನಂತಕಪುರವನಾಂತರಕೆ ೯೩

ಅರಿಯ ಹೆಣನನು ಹಾಯ್ಕಿ ನೊರೆನೆ
ತ್ತರಲಿ ಬೊಟ್ಟಿಟ್ಟನು ವರೂಥದ
ಹೊರಗೆ ಬಂದನು ಕಳಶಜಲದಲಿ ತೊಳೆದು ಕರಪದವ
ಪರಿಹೃತಶ್ರಮನಾಗಿ ವರಕ
ರ್ಪುರದ ಕಸ್ತುರಿಗಂಧಲೇಪವ
ನೊರಸಿ ಹೊಸಮುಡಿವರ್ಗದಲಿ ರಂಜಿಸಿದನಾ ಭೀಮ ೯೪

ವೀಳೆಯವ ಕೊಂಡನು ವರೂಥದ
ಮೇಲುಮಲಗೆಯ ಗದ್ದುಗೆಗೆ ರಿಪು
ಕಾಲಭೈರವನಡರಿದನು ತುಡುಕಿದನು ನಿಜಧನುವ
ಕಾಳೆಗಕೆ ಕಡೆಹಾರವೇ ತೆಗೆ
ಯಾಳನಾಗಲಿ ಬಂದು ಕುರುಭೂ
ಪಾಲ ಬೀಳಲಿ ಧರ್ಮರಾಯನ ಚರಣಕಮಲದಲಿ ೯೫

ಎನುತ ಬಿಟ್ಟನು ರಥವ ದುರಿಯೋ
ಧನನ ಮೋಹರಕಾಗಿ ಬಂಡಿಯ
ಬಿನುಗುಗಳು ಕೈದೋರಿರೈ ಪುನ್ನಾಮನಾರಿಯರು
ಅನುಜರಾವೆಡೆ ಕರಸು ಕೌರವ
ಜನಪ ಕರ್ಣಾದಿಗಳ ಬಿಂಕವ
ನೆನಗೆ ತೋರಾಯೆನುತ ಮೊಳಗಿದನರಸನಿದಿರಿನಲಿ ೯೬

ನಿಯತ ಜಯಲುಬ್ಧಕನು ರಣಭೂ
ಮಿಯಲಿ ಹರಿಸಲು ಜಯದ ಸಿರಿಯನು
ಭಯವಿಹೀನರು ಬೆರಗುಗೊಂಡರು ಭೀಮನುರವಣೆಗೆ
ಹಯದ ವಾಘೆಯನಿಳುಹಿದರು ಮು
ನ್ನಿಯರು ಮನಗುಂದಿದರು ಕುರುಸೇ
ನೆಯಲಿ ಕಾಣಿಸಲಾದುದಪಜಯಸಿರಿಯ ಸಂಭ್ರಮವು ೯೭

ಬೆಟ್ಟವಾದವು ಬಿಸುಟ ಕೈದುಗ
ಳೊಟ್ಟಿಲಾದುವು ಸಿಂಧ ಸೆಳೆರಥ
ವಿಟ್ಟಿಡೆಗಳಲಿ ಮಿಸುಕಲಸದಳವಾದುದನಲಂಗೆ
ಥಟ್ಟುಮುರಿದುದು ಪಟುಭಟರು ಧೃತಿ
ಗೆಟ್ಟು ದೆಸೆದೆಸೆಗಳಲಿ ಮಿಗೆ ಸಾ
ಲಿಟ್ಟು ಸರಿದುದು ಕೇಳು ಜನಮೇಜಯಮಹೀಪಾಲ ೯೮

ಬಿಸುಟರಮಲಚ್ಛತ್ರವನು ಕೂ
ರಸಿಯನೀಡಾಡಿದರು ರಾಯರು
ಮುಸುಂಡ ತಿರುಹುತ ವಕುಟವರ್ಧನಕೋಟಿ ಸಮರದಲಿ
ಜಸವ ಮಾರಿದರಾಯಯುಧಂಗಳ
ಹೆಸರ ವೀರರು ಬಾಹುಬಲಸಾ
ಹಸರು ಕಂಗೆಟ್ಟೋಡಿದರು ಪವನಜನ ಸಮರದಲಿ ೯೯

ಬಲ ಮುರಿದು ಬರುತಿರ್ದುದೈ ಕಡೆ
ಜಲಧಿಯ ತೆರೆ ತಿರುಗಿದಂತಿರೆ
ತಲೆಮುಸುಕಿನಲಿ ನೋಟದುರವಣೆಕಾರ ನಾಯಕರು
ನೆಲೆದೆಗೆದು ನಮ್ಮವರು ನೃಪನರ
ನೆಲೆಗೆ ಸೇರದೆ ಸರಿಯೆ ಕಂಡನು
ನಳಿನಮಿತ್ರನ ಮೊಮ್ಮ ತಡೆದನು ಭೀಮನುರವಣೆಯ ೧೦೦

ಇಪ್ಪತ್ತನೆಯ ಸಂಧಿ

ಸೂ. ಚಂಡಬಲ ಪವಮಾನಜನ ಮುಂ
ಕೊಂಡು ವಿರಥನಮಾಡಿ ಕದನೋ
ದ್ದಂಡ ನರನೊಳು ಕಾದಿ ಮಡಿದನು ವೀರವೃಷಸೇನ

ಅವಧರಿಸು ಧೃತರಾಷ್ಟ್ರಾವನಿಪ ನಿ
ನ್ನವಗೆ ತಿಳಿದುದು ಸೊಕ್ಕು ಚಿತ್ತದ
ಬವಣೆ ಬೀತುದು ಮನದ ಜೊಂಪಿಳಿದುದು ಭಡಾಳಿಸಿದ
ಡವರಿಸಿದ ಡೊಳ್ಳಾಸ ರಣಬೇ
ಳುವೆಯ ಬಿಗುಹಡಗಿದವೊಲನಿಬರು
ತವತವಗೆ ನಾಚಿದರು ಕೋಳಾಹಳಕೆ ಪವನಜನ ೧

ಮುಟ್ಟಿ ಬಂದುದು ಕೇಡು ನೃಪನೊಡ
ಹುಟ್ಟಿದನ ಹೊಯ್ದುರುಣಜಲದಲಿ
ಚಿಟ್ಟುರಿದು ರಿಪು ಚಾರಿವರಿದನು ಕಳನ ಚೌಕದಲಿ
ಇಟ್ಟಣಿಸುವೀ ರಣಮದಾಂಧನ
ತೊಟ್ಟುಳಿಕೆಯನು ಕೇಳ್ವ ರಾಯಘು
ರಟ್ಟನಿಲ್ಲಾ ಎನುತ ತನಿಮುಸಗಿತು ಭಟಸ್ತೋಮ ೨

ದೊರೆಯೊಡನೆ ತಲೆಯೊತ್ತಿ ಮುರಿದ
ಬ್ಬರಿಗನುಬ್ಬಿದ ಸಮರದಲಿ ನಿ
ಬ್ಬರದ ಬೆರಗಿನೊಳಿದ್ದರೈ ಬಳಕೀಗಲರಿತಿರಲಾ
ಅರಸನನುಜನ ಕುಡಿದ ನೆತ್ತರ
ಬರಿಸುವೆನು ಮೂಗಿನಲಿ ಮಾಣೆನು
ತರಿಯ ರಥದರವಣೆಗೆ ಕರ್ಣನಸೂನುವಿದಿರಾದ ೩

ಘಡ ವಿಕಾರವೆ ನೋಡು ನೆತ್ತರು
ಗುಡುಹಿತನವೇ ನಮ್ಮೊಡನೆ ಮೊಲೆ
ಮುಡಿಯ ಮೂದಲೆಗರುಹರೇ ಕರ್ಣಾದಿನಾಯಕರು
ಕುಡಿದ ರಕುತದ ಜಿಗುಳೆ ನೀ ನಿ
ನ್ನೊಡಲ ನಿಗುಚುವೆ ನಿಲ್ಲೆನುತ ಬಲ
ನೆಡನ ಬಿರುದರ ಮೇಳದಲಿ ತೂಗಿದನು ವೃಷಸೇನ ೪

ವೀರ ಮರ್ಮಸೇನಾಧಿಪತಿಯು ಕು
ಮಾರ ನೂಕಿದನೆನುತಖಿಳಪರಿ
ವಾರ ಕವಿದುದು ಕರಿ ರಥಾಶ್ವ ಪದಾತಿಯೊಡ್ಡಿನಲಿ
ಆರು ಪೊಗಳುವರನಿಲಸುತನ ಸ
ಧಾರತನವನು ಮೇಲೆ ಬೀಳ್ವ ಕ
ಠೋರ ಶಸ್ತ್ರವ್ರಜವ ನೂಕಿದನಡ್ಡವರಿಗೆಯಲಿ ೫

ಅಕಟ ಮಗುವಿನ ಕೂಡೆ ಬಲುನಾ
ಯಕರು ಬಯಸಿದರಳಿವನಿದು ಸೇ
ವಕರ ಪಂಥವಲಾ ವಿರೋಧವೆ ಎನುತ ಮುರಿದೆದ್ದು
ಲಕುಟಹತನಿರ್ಭಿನ್ನಭಾಂಡ
ಪ್ರಕರವೋ ನಿನ್ನಾಳುಕುದುರೆಯೊ
ಸಕಲ ಸುಭಟರನೊಕ್ಕಲಿಕ್ಕಿದನೊಂದು ನಿಮಿಷದಲಿ ೬

ನುಗ್ಗ ಬಡಿದಂಜಿಸಿದ ಗೆಲವಿನ
ಸುಗ್ಗಿಗಿದೆ ಮಳೆಗಾಲವೆನುತ ನಿ
ರಗ್ಗಳಿತ ಭುಜಶೌರ್ಯ ಸುರಿದನು ಸರಳ ಸರಿವಳೆಯ
ಬಗ್ಗಿ ಕವಿವಂಬುಗಳ ಗರಿಗಳ
ಲಗ್ಗಗರಿನಾಯಕರ ಕಿವಿಗಳು
ನೆಗ್ಗಿದವು ಮುಗ್ಗಿದವು ಮನ ಮಾರಂಕದತಿರಥರ ೭

ಬಲುಹು ಮಗುವಿನ ಶೌರ್ಯವೀಸ
ಗ್ಗಳೆಯನೈ ಶಿವಯೆನುತ ಚಿತ್ತದೊ
ಳಳುಕಿ ಹೂಡಿದನಂಬನವಧಾನದಲಿ ಬಿಡೆಯರಿದು
ಹಿಳುಕುಹಿಳುಕುಗಳೊರಸೊರಸು ಮುಂ
ಕೊಳಿಸೆ ಹಿಂದಣೆನಂಬನಂಬು
ಚ್ಚಳಿಸಲೆಚ್ಚನು ಭೀಮ ರವಿನಂದನನ ನಂದನನ ೮

ಕೆಣಕಿದುರಿಯಂದದಲಿ ದಂಡೆಯೊ
ಳಣೆದ ಕಾಳೋರಗನವೊಲು ಚ
ಡ್ಡಣೆಯ ಚಪಳಕ್ರೋಧಶಿಖಿ ಮೋಹಿದುದು ಮೋರೆಯಲಿ
ಕಣೆಗಳೋ ಕಲ್ಪಾಂತವಹ್ನಿಯ
ಡೊಣೆಗಳೋ ಹಾಳಾಹಳದ ಡಾ
ವಣೆಗಳೋ ನಾವರಿಯೆವೆಚ್ಚನು ವೀರ ವೃಷಸೇನ ೯

ಫಲಿತ ಶಾಲೀವನವ ಮುತ್ತಿದ
ಗಿಳಿಗಳೋ ತಾವರೆಯ ತೆಕ್ಕೆಯೊ
ಳಿಳಿದ ಮರಿದುಂಬಿಗಳೊ ವೃಷಸೇನನ ಶರಾವಳಿಯೊ
ಹಿಳುಕು ಹೇರಿದವಾತನಶ್ವಾ
ವಳಿಯಲಾತನ ಸೂತನೊಡಲಲಿ
ಹಲವು ಮಾತೇನಾತನಂಗೋಪಾಂಗ ನಿಕರದಲಿ ೧೦

ಕೂಡೆ ಹಾಹಾಧ್ವನಿಯ ರವವ
ಲ್ಲಾಡಿಸಿತು ಪರಬಲವನೀತನ
ತೋಡು ಬೀಡಿನ ಸಂಚ ಸೆಳೆದುದು ಹಗೆಯ ಸಾಹಸವ
ಓಡಲರಿಯದೆ ಭೀಮನಂಬಿನ
ರೂಢಿ ನಿಗುಂಚದೆ ಕಾದುವರೆ ಜಯ
ಜೋಡಿಸದೆ ಜೋವಳಿಸಿ ಜವಗುಂದಿದನು ಕಲಿಭೀಮ ೧೧

ಅರಸ ಕೇಳೈ ಬಳಿಕ ಭೀಮನ
ತರಹರವನರಿದಾಚೆಯಲಿ ಸಂ
ವರಿಸಿಕೊಂಡನು ನಕುಳ ಬಿಟ್ಟನು ಸೂಠಿಯಲಿ ರಥವ
ತರುವಲಿಯೆ ನೀನಿದಿರಹುದೆ ಫಡ
ಸರಿಸವೇ ಭೀಮಂಗೆ ನೀನೆನು
ತರಿಭಟನ ಕೆಣಕಿದನು ಕೆದರಿದನಸ್ತ್ರ ಸಂತತಿಯ ೧೨

ಅರಿವರು ನಕುಲಾಂಕರೇ ಜು
ಜ್ಝಾರರೇ ನಿಮ್ಮಣ್ಣನಾಡಿ ದು
ಹಾರದಲಿ ಸೆರೆಯೋದನಾತನ ಹರಿಬವೇ ನಿಮಗೆ
ತೀರದೇ ನಿಮ್ಮಲಿ ವೃಥಾಹಂ
ಕಾರವೇಕಿದು ಪಾರ್ಥನೆಂಬನ
ತೋರಿರೇ ನೀ ಸಾರೆನುತ ತೆಗೆದೆಚ್ಚು ಬೊಬ್ಬಿರಿದ ೧೩

ಮಗುವು ನಿನ್ನೊಡನೇನು ಸರಿಯೋ
ಮಿಗಿಲೊ ಶರವಿವ ಹೇಳೆನುತ ಕೈ
ಮಗುಚಿದನು ಹೊದೆಯಂಬನೀತನಮೇಲೆ ನಿಮಿಷದಲಿ
ಮುಗಿಲ ಹರಿಗೆಗೆ ಮಾರುತನ ಬಂ
ದಿಗೆಯ ಹೊಯ್ಲೆನೆ ನಕುಳನೆಚ್ಚಂ
ಬುಗಳು ಕಿಡಿಸೂಸಿದವು ಕಂಡನು ರಥದ ಬಳಸಿನಲಿ ೧೪

ಮರಳಿ ನಕುಲನನೆಚ್ಚನಾತನ
ತುರಗವನು ಮುರಿಯೆಚ್ಚನಾತನ
ವರ ರಥವ ಸಾರಥಿಯನಾತನ ಟೆಕ್ಕೆಯುವ ಧನುವ
ಉರುಳಿಗಡಿದನು ಮತ್ತೆ ಜೋಡಿಸಿ
ಪರಿತರಲು ಮುರಿಯೆಚ್ಚು ಪುನರಪಿ
ಹುರುಳುಗೆಡಿಸಿದನರಸಿ ಹರಿದನು ಮತ್ತೆ ಪವನಜನ ೧೫

ನಕುಲ ಮುರಿದನು ಭೀಮ ನಿಲು ಕಾ
ರ್ಮುಕವ ಹಿಡಿ ಬಿಡು ಸರಳನಳುಕವ
ಡಕಟ ಕೊಲ್ಲೆನು ನಿನ್ನ ತಮ್ಮನ ಕರಸು ಫಲುಗುಣನ
ವಿಕಳರುಳಿದಿರಲಾಗದೀ ಸಾ
ಯಕದ ಸೃಷ್ಟಿವಿರಿಂಚ ಸುಭಟ
ಪ್ರಕರದೊಳು ತಾನೆನುತ ತೆಗೆದೆಚ್ಚನು ವೃಕೋದರನ ೧೬

ಮುರಿದು ನಕುಲನ ಭೀಮಸೇನನ
ನರಸಿ ಹಿಡಿದನು ಬವರವನು ಭಟ
ನುರುಬೆ ಬಲುಹೋ ದಿಟ್ಟನಿವ ಕೌರವರ ಥಟ್ಟಿನಲಿ
ತೆರಹುಗೊಡದಿರಿ ನೂಕುನೂಕೆನು
ತುರುಬಿದನು ಸಹದೇವನೀತನ
ತರುಬಿ ಮೂದಲಿಸಿದನು ಮುಸುಕಿದನಂಬಿನಲಿ ರಥವ ೧೭

ಮೊದಲ ಬಲುಹನು ಕಂಡೆನಿನ್ನೀ
ತುದಿವರನ ತನಿಗೆಚ್ಚು ನಮ್ಮನು
ಬೆದರಿಸುವುದೋ ಶಿವಶಿವಾ ತಪ್ಪೇನು ತಪ್ಪೇನು
ಸದೆಗರಿವದಿರ ಗೆಲುವುದಾವು
ಗದಲಿ ಬಹುದೋ ಎನುತ ಪರಿಹಾ
ಸದಲಿ ರಿಪುಭಟನಂಬುಗಳ ಕೆದರಿದನು ಕಣೆಗಳಲಿ ೧೮

ಆತನೊಡನೆಯೆ ತೇರುತುರಗ
ವ್ರಾತವನು ಹುಡಿಮಾಡಿ ರಥಹಯ
ಸೂತ ಧನು ಶಸ್ತ್ರೌಘ ಕವಚ ಧ್ವಜ ಪತಾಕೆಗಳ
ಘಾತಿಸಿದನೈದಂಬಿನಲಿ ಮಗು
ಳಾತನುರವನು ತೋಡಿ ತೊಲಗಿಸಿ
ವಾತಜನನರಸಿದನು ಮೂದಲಿಸಿದನು ಸರಳಿನಲಿ ೧೯

ಶಿವಶಿವಾ ಸಹದೇವ ನಕುಲರ
ಬವರ ಮುರಿದುದು ಬಿಡದೆ ಬಳಿಯಲಿ
ಪವನಜನ ತುಡುಕಿದನು ನೂಕಲಿ ಸರ್ವದಳವೆನುತ
ತವತವಗೆ ಸುತಸೋಮಕಾದಿಗ
ಳವಗಡಿಸಿದರು ಮತ್ಸ್ಯಕೈಕೆಯ
ನಿವಹ ಸಾತ್ಯಕಿ ಚೇಕಿತಾನರು ಕವಿದರುರವಣಿಸಿ ೨೦

ಎಲೆಲೆ ಪಾಂಡವ ಸರ್ವದಳವಿ
ಟ್ಟಳಿಸಿತೋ ಸುಕುಮಾರನೊಬ್ಬನೆ
ನಿಲುವುದರಿದೋ ನೂಕೆನುತ ಕುರುಸೇನೆ ಸಂವರಿಸೆ
ಉಲುಕದಿರಿ ಭಾರಣೆಯ ಭಟರ
ಗ್ಗಳೆಯರೆನ್ನೀ ಮಕ್ಕಳಾಟಿಕೆ
ಯಳವನೀಕ್ಷಿಸಿ ಸಾಕೆನುತ ತರುಬಿದನು ಪರಬಲವ ೨೧

ತೇರನೆಚ್ಚನು ಕುದುರೆಕಾರರ
ದೂರದಲಿ ಖಂಡಿಸಿದನೊಗ್ಗಿನ
ವಾರಣೌಘವ ಸೀಳಿದನು ಹೂಳಿದನು ರಕುತದಲಿ
ಆರು ಬಲ್ಲರು ಪಯದಳವನಾ
ವೀರ ಸುತಸೋಮಾದಿ ನಿಖಿಳಕು
ಮಾರರಂಘವಣೆಗಳ ಸೆಳೆದುದು ಭೀತಿರಸಜಲಧಿ ೨೨

ಉಗುಳುಗುಳು ದುಶ್ಶಾಸನನ ನೀ
ನುಗುಳು ಮಗುಳಿನ್ನಾರ ಬಸುರನು
ಹೊಗುವೆ ಮೊಲೆವುಂಡಿಯಾರಿಗಿವು ಫಡ ನಿಲ್ಲು ನಿಲ್ಲೆನುತ
ಹೊಗರೊಗುವ ಹೊಸಮಸೆಯ ಬಾಯ್ಧಾ
ರೆಗಳ ಬಂಬಲುಗಿಡಿಯ ಬಾಣಾ
ಳಿಗಳಲೀತನ ಹೂಳಿದನು ಕಾಣೆನು ವೃಕೋದರನ ೨೩

ಕಳವಳಿಸಿತರಿಸೇನೆ ಬೊಬ್ಬೆಯೊ
ಳುಲಿದುದೀ ನಮ್ಮವರು ಕಂಡನು
ಬಳಿಕ ಮುರರಿಪು ತೋರಿದನು ಪಾರ್ಥಂಗೆ ಪವನಜನ
ಎಲೆ ಧನಂಜಯ ಭೀಮಲಯ ನಿ
ಮ್ಮಳಿವು ನಮ್ಮ ಪರೋಕ್ಷದಲಿ ನಾ
ವುಳಿವರಲ್ಲೀ ಹವಣ ಕಂಡೆವು ಕರ್ಣತನಯನಲಿ ೨೪

ಈಸು ಘನವೇ ಕೃಷ್ಣ ಮಗುವಿವ
ನೈಸರವನೆಂದಿದ್ದೆ ನಾದರೆ
ಹಾಯ್ಸು ರಥವನು ಭೀಮಸೇನನ ರಥದ ಮುಂಗುಡಿಗೆ
ವಾಸಿಯೇಕಿವನಲಿ ವಚೋವಿ
ನ್ಯಾಸದಿಂ ರಥ ಮುಂಚಿತಹಿತನ
ಘಾಸಿಯಿಂದನಿಲಜನನುಗಿದನು ಬಗಿದು ರಿಪುಶರವ ೨೫

ಎಸುಗೆ ಚೆಲುವನು ಹಾಲುಗಲ್ಲದ
ಹಸುಳೆಯಂಗವಿದಲ್ಲ ತುಂಬಿಯು
ದೆಸೆಗೆ ಕೆಂದಾವರೆಯ ಬನವೇ ವನದವಾನಳನು
ಉಸುರದೀ ಜಯದೊಪ್ಪದಲಿ ಜಾ
ಳಿಸುವರೊಳ್ಳಿತು ತೊಲಗೆನುತ ನಿ
ಪ್ಪಸರದಲಿ ತೆಗೆದೆಚ್ಚನರ್ಜುನನಿನಸುತನಸುತನ ೨೬

ಚಾರುಪೌರುಷ ಸಮರವಿಹ್ವಳ
ತಾರಕರು ನೀವ್ ನಮ್ಮದಿದು ಕೌ
ಮಾರದೆಸೆ ತಾಮಸವಲೇ ನಿಮಗಾನು ಸಮಬಳನೆ
ಕೂರಲಗು ತೊಲೆಗೋಲಿನಲಿ ನಿ
ಮ್ಮಾರುಭಟೆಯನು ನಮ್ಮ ಬಾಹುವಿ
ಕಾರಬಲವನು ತೂಗಿಯೆನುತೆಚ್ಚನು ಧನಂಜಯನ ೨೭

ಮುರಮಥನ ಚಿತ್ತೈಸಿದೈ ತರು
ವರಿಯ ಸಾಭಿಪ್ರಾಯ ವಾಕ್ಯ
ಸ್ಫುರಣವನು ಸಭ್ಯಾಂಗ ಭಾಷಿತ ಭಾವ ನಿಷ್ಠುರವ
ಪರಿಹೃತಿಯೆ ಕರ್ತವ್ಯವೆನುತು
ಚ್ಚರಿಸಿದನು ಮೌರ್ವೀ ನಿನಾದ
ಸ್ಫುರಿತ ವಿಮಳ ಪ್ರಣವಮುಖ ಶರಸೂಕ್ತಸಂತತಿಯ ೨೮

ಅದು ಬಳಿಕ ಲೋಕಾಯತಾಂಗ
ಚ್ಛದನ ಪರನಾರಾಚ ನಿರ್ಮಾ
ಣದಲಿ ಭಂಗಿತವಾಯ್ತು ಪಾರ್ಥನ ಬಾಣದೊಡ್ಡವಣೆ
ಬಿದಿರ ಮೊಳೆಯಲಿ ಹರಿವುದೇ ಬೆ
ಟ್ಟದಲಿ ಹರಿಯದ ವಸ್ತು ಹರನಿಂ
ದೊದಗಿದಂಬಿನ ಹವಣ ತೋರೆಂದೆಚ್ಚನರ್ಜುನನ ೨೯

ದನುಜರಿಪು ಹುಸಿಯಲ್ಲ ನಮ್ಮೊ
ಡ್ಡಿನಲಿ ಭಟನಭಿಮನ್ಯು ಪರರೊ
ಡ್ಡಿನಲಿ ಭಟನಿವನಲ್ಲದಿಲ್ಲ ಕುಮಾರವರ್ಗದಲಿ
ತನಗೆ ದೇವತ್ರಿತಯವಲ್ಲದೆ
ದನುಜ ದಿವಿಜಾದಿ ತ್ರಿಲೋಕದ
ಜನವಿದಿರೆ ಮೆಚ್ಚಿಸಿತು ಮಗುವಿನ ದಿಟ್ಟತನವೆಂದ ೩೦

ಪೂತುರೇ ವೃಷಸೇನ ಶರಸಂ
ಘಾತವಿದೆಕೋ ಸೈರಿಸಾದಡೆ
ಪಾತಕಕ್ಕೋಸರಿಸಿದೆವಲೇ ಭ್ರೂಣಹತಿಯೆಂಬ
ಮಾತು ಹಲವರಲೇನು ಪಾರ್ಥಿವ
ಜಾತಿಗೆನುತ ಮಹಾಸ್ತ್ರನಿಕರದೊ
ಳೀತನನು ಮುಸುಕಿದನು ಶರಮಯವಾಯ್ತು ರಣಭೂಮಿ ೩೧

ಆವ ವಹಿಲದೊಳರ್ಜುನನ ಬಾ
ಣಾವಳಿಯ ತರಿದೊಟ್ಟಿ ಮಗುಳೆ ಶ
ರಾವಳಿಯ ಕೊನೆಗಳಲಿ ಮುಂದ್ರಿಸಿದನು ಧನಂಜಯನ
ನಾವರಿಯೆವೀಸದಂಭುತವನಿವ
ಕಾವನೇ ವಿಕ್ರಮವರನರ್ಜುನ
ದೇವನಲಿ ಸರಿಮಿಗಿಲ ಕಾದಿದನರಸ ಕೇಳೆಂದ ೩೨

ನರನ ಮಾರಂಕದ ಮಹೇಂದ್ರಗೆ
ಚರಣಯುಗ ಬೆನ್ನಿನಲಿ ಬವರದೊ
ಳರಿದಲ್ಲೆ ಭೀಷ್ಮಾದಿಗಳಿಗೀ ರಣದ ಮೇಳಾಪ
ಜರಡನ್ನೆ ಭಾರಂಕದಾಳಿವ
ತರಳನೇ ಸುರಗಿರಿಯನಾನುವ
ಕೊರಳ ಸತ್ವವೆ ಶಿವಶಿವವೆಂದುದು ಮೇಲೆ ಸುರಕಟಕ ೩೩

ಎಸಲು ಕಡಿದನು ಝೂಡಿಯಲಿ ಝೊಂ
ಪಿಸಲು ಜಡಿದನು ಚಳಕದಲಿ ಜಾ
ಳಿಸಿದರೊಂದಕ್ಕೆರಡು ನಾಲ್ಕಕ್ಕೆಂಟು ತೋರಿಸಿದ
ಮುಸುಕಿದರೆ ಮಂತ್ರಾಸ್ತ್ರದಲಿ ಮೋ
ಹಿಸಿದ ಸರಿಸಕೆ ಸರಿಸ ವಿಷಮಕೆ
ವಿಷಮಗತಿ ಶರಸಾರ ಸಾಳಂಗದಲಿ ರಂಜಿಸಿದ ೩೪

ಆಯಿತಿದು ಸಮರದಲಿ ಗುರು ಗಾಂ
ಗೇಯ ಕರ್ಣದ್ರೌಣಿಗಳ ತರು
ವಾಯ ಲೆಕ್ಕಕೆ ಸಂದನೈ ಮಝು ಪೂತು ಪಾಯ್ಕೆನುತ
ಸಾಯಕವನಭಿಮಂತ್ರಿಸುತ ವೈ
ನಾಯಕಾಸ್ತ್ರವ ಹೂಡಿದನು ಬಲ
ಬಾಯಬಿಡೆ ಚಿಗಿದಂಬು ಕಡಿದುದು ಕರ್ಣನಂದನನ ೩೫

ಚಿಗಿದ ತಲೆ ಬೊಬ್ಬಿರಿಯೆ ಬಳಿಕಾ
ಳುಗಳ ದೇವನು ಮುಂಪ್ಪಿಬಳಿಗೋ
ಲುಗಳನೈದಾರೇಳ ಹಳುಹಳುವಾಯಿಯೆಸುಗೆಯಲಿ
ತೆಗೆದು ನಿಂದುದು ಭಯರಸದ ಹ
ಬ್ಬುಗೆಯಲುಬ್ಬಿದ ಶೋಕದೊಡ್ಡಿನ
ಮುಗಿಲು ಕರೆದುದು ಕುರುಬಲದ ಕಂಬನಿಯ ಬಿರುವಳೆಯ ೩೬

ಕದಡಿತೀ ಬಲಜಲಧಿ ಕಲ್ಪಾಂ
ತದ ಸಮುದ್ರದವೊಲು ಮಹಾಧ್ವನಿ
ಗದಗದಿಸೆ ಹಾ ಕರ್ಣಸುತ ಹಾ ಕರ್ಣಸುತ ಎನುತ
ಕೆದರಿದೀಶನ ಭಾಳದುರಿನೇ
ತ್ರದವೊಲುರಿದುದು ಸೂತಸುತ ಸಾ
ಕಿದ ಕುಮಾರನ ಮೇಳವದ ಮನ್ನಣೆಯ ಪರಿವಾರ ೩೭

ನೂಕಿತೀ ಬಲದಳದ ಪದಹತಿ
ಗೇಕೆ ಬಿರಿಯದು ಧರಣಿ ದಿಕ್ಕರಿ
ಯೋಕರಿಸದೇ ಮದವನಾದರೆ ಪುಣ್ಯನಬುಜಭವ
ಈ ಕಡುಹಿನಾತಗಳನಾನುವ
ಡೀ ಕಪರ್ದಿಯೆ ಸಾಕು ಕೆಲಸವ
ರಾಕೆವಾಳರೆ ಎನುತಲಿರ್ದುದು ಮೇಲೆ ಸುರಕಟಕ ೩೮

ಉರಿಯ ಸರಿಗೇರಿದ ಪತಂಗಕೆ
ಮರುಳುದಲೆಯೋ ಮತ್ತೆ ರಣದಲಿ
ನರನೊಡನೆ ಕಳನೇರಿದಾತನ ಸತಿ ಸುವಾಸಿನಿಯೆ
ಅರಳ ಹೊಸ ಸಂಪಗೆಯ ಮಧುವನು
ಮರಿಗೆ ತಹವೇ ತುಂಬಿಗಳು ಕೇ
ಳರಸ ಹರಿಬಕೆ ಹೊಕ್ಕ ಸುಭಟರ ಕಾಣೆ ನಾನೆಂದ ೩೯

ಕೇಣವಿಲ್ಲದೆ ಹೊಕ್ಕ ಕುದುರೆಗ
ಳಾಣತಿಯ ತುಂಬಿಯ ಕಪೋಲ
ದ್ರೋಣಿಯೊರತೆಯ ಮದದ ಕರಿಗಳ ಕಡುಹ ನಿಜರಥದ
ಸಾಣೆಯಲಗಿನ ಸರಿಯ ಸೋನೆಯ
ಜಾಣತನವೋ ಜಯದ ಸುಭಟರ
ಕಾಣೆನೈ ಕಣೆಯೆರಡರಲಿ ಸಂವರಿಸಿದನು ಪಾರ್ಥ ೪೦

ವೀರದುಶ್ಶಾಸನನು ಕರ್ಣಕು
ಮಾರಕರು ನೀ ಸಾಕಿದಗ್ಗಳ
ವೀರದಳ ಕೌರವ ಸಹೋದರಸೇನೆ ಮೊದಲಾಗಿ
ತೀರಿತಾಹವದಲಿ ಕುರುವ್ರಜ
ವಾರುಧಿಗೆ ಸರಿಯಾಯ್ತು ನಿನ್ನ ಕು
ಮಾರನಿಂಗಿತವರಿದು ಸಮರಕೆ ಕರ್ಣನನುವಾದ ೪೧

ಇಪ್ಪತ್ತೊಂದನೆಯ ಸಂಧಿ

ಸೂ. ವೈರಿಗಜ ಪಂಚಾನನನು ರಣ
ಧೀರನಪ್ರತಿಮಲ್ಲ ಕರ್ಣನು
ದಾರದಲಿ ಹಳಚಿದನು ಹನುಮನ ಹಳವಿಗೆಯ ರಥವ

ಕೇಳು ಧೃತರಾಷ್ಟ್ರಾವನಿಪ ನಿ
ನ್ನಾಳಸುಮ್ಮಾನವನು ತನುರೋ
ಮಾಳಿ ಪಲ್ಲವಿಸಿದುದು ಪರಿತೋಷಪ್ರವಾಹದಲಿ
ಕಾಳೆಗಕೆ ಕೈವೊಯ್ದು ಹಗೆವನ
ಮೇಳಯದ ಕಳನೇರಿದನು ತ
ನ್ನಾಳುತನವನು ತೋರಲಾಯ್ತೆನುತುಬ್ಬಿದನು ಕರ್ಣ ೧

ಆಳ ಹೊಯ್ ಹೊಯ್ ನಾಯಕರ ನಿಲ
ಹೇಳು ಕೃಪ ಗುರುನಂದನಾದಿಗ
ಳಾಳಿಗಳಿಗೌತಣವ ರಚಿಸುವೆ ನಿಮಿಷ ಸೈರಿಸಲಿ
ಕಾಳೆಗದಲಿಂದಹಿತರಾಯರ
ಭಾಳಲಿಪಿಗಳನೊರಸುವೆನು ಭೂ
ಪಾಲಕನ ಮೊಗವಡದ ದುಗುಡವನುಗಿವೆ ನಾನೆಂದ ೨

ತರಿಸಿ ಸಾದು ಜವಾಜಿಗಳ ಹೊಂ
ಭರಣಿಯಲಿ ಮೊಗೆಮೊಗೆದು ಶಲ್ಯಗೆ
ಸುರಿದು ಹಡಪಿಗ ಚಮರ ಬಾಹೆಯ ಬಾಣದಾಯಕರ
ಕರೆದು ಮನ್ನಿಸಿ ತನ್ನನತಿವಿ
ಸ್ತರಿಸಿ ಹೊಸಮುಡಿವರ್ಗದಲಿ ಮಿಗೆ
ಮೆರೆದು ರಣಸುಮ್ಮಾನದಲಿ ಹೊಗರೇರಿದನು ಕರ್ಣ ೩

ತೊಳಗಿ ಬೆಳಗುವ ಶಿರದ ಪಚ್ಚೆಯ
ಹಳುಕು ಬೆರಸಿದ ವೀಳೆಯವನಿ
ಕ್ಕೆಲದ ಶಲ್ಯಾದಿಗಳಿಗಿತ್ತನು ವರರಥಾಗ್ರದಲಿ
ಕಳಚಿ ತೆಗೆದನು ಜೋಡ ಮೈವೆ
ಗ್ಗಳಿಸಿ ದಳವೇರಿದುದು ಮನ ಮೊಗ
ಥಳಥಳಿಸೆ ಬಹಳಪ್ರತಾಪದಲಿರ್ದನಾ ಕರ್ಣ ೪

ತಳಿತು ಮುತ್ತುವ ಮುಗಿಲ ಝಾಡಿಸಿ
ಝುಳಪಿಸುವ ರವಿಯಂತೆ ಭುವನವ
ಬೆಳಗಲುದ್ರೇಕಿಸುವ ಭಾರ್ಗವ ಭಾಳಶಿಖಿಯಂತೆ
ಹೊಳೆಹೊಳೆವ ಕರ್ಣಪ್ರತಾಪಾ
ನಳನ ನಾಟ್ಯವ ಕಂಡು ಕೌರವ
ಬಲದೊಳೊಸಗೆಯ ಲಗ್ಗೆ ಮಸಗಿತು ಭೂಪ ಕೇಳೆಂದ ೫

ರಾಯನನುಜನ ರುಧಿರ ಜೀವದ
ಬೀಯದಲಿ ಕರ್ಣಾತ್ಮಜನ ಕುಲಿ
ಶಾಯುಧನ ಸಾಲೋಕ್ಯದಲಿ ಕಣ್ದೆರೆದ ವೇದನೆಯು
ಆಯಸವ ನೆರೆ ಮರೆದು ಕೌರವ
ರಾಯ ಭುಲ್ಲವಿಸಿದನು ಲಹರಿಯ
ಘಾಯದಲಿ ಸೂಳೈಸಿದವು ನಿಸ್ಸಾಳಕೋಟಿಗಳು ೬

ಸಾರಿ ಸುಭಟರ ಜರೆವ ಕಹಳೆಯ
ಗೌರುಗಳ ತಿತ್ತಿರಿಯ ಚಿನ್ನದ
ಚೀರುಗಳ ನಿಡುಗೊಂಬುಗಳ ಚೆಂಬಕನ ನಿರ್ಘೋಷ
ಡೋರುಗಳೆದುವು ನೆಲನನುದಧಿಯ
ಕಾರಿಸಿದವಡಿಮುಳಲನೆನೆ ಹುರಿ
ಯೇರಿತಬ್ಬರವಿವರ ಬಲದಲಿ ಭೂಪ ಕೇಳೆಂದ ೭

ರಥವಿಳಿದು ಬಲವಂದು ನಿಜಸಾ
ರಥಿಗೆ ಕೈಮುಗಿದಶ್ವಚಯಕತಿ
ರಥಭಯಂಕರನೆರಗಿ ಕಂದವ ತಟ್ಟಿ ಬೋಳೈಸಿ
ರಥವನಡರಿದು ನೋಡಿ ಗಗನದ
ರಥಿಗೆ ತಲೆವಾಗಿದನು ಲೋಕ
ಪ್ರಥಿತಸಾಹಸಮಲ್ಲ ಮುದದಲಿ ತುಡುಕಿದನು ಧನುವ ೮

ಸರಳ ಹೊದೆಗಳ ತುಂಬಿ ಬಂಡಿಯ
ನರಸ ಕಳುಹಿದನೆಂಟುನೂರನು
ಚರರು ಪರಿವೇಷ್ಟಿಸಿತು ಪರಿಚಾರಕರ ವಿಗ್ರಹದ
ಸರಿಸ ಸಿಂಧವನೆತ್ತಿಸುತ ಬೊ
ಬ್ಬಿರಿದು ಜವನಿಕೆವಿಡಿದು ಭೀಮನೊ ೯
ನರನೊ ನಿಲುವವರಾರು ಬರಹೇಳೆಂದನಾ ಕರ್ಣ

ಮಾತು ತಪ್ಪಿತು ರಿಪುಗಳೈವರಿ
ಗೌತಣಿಸಿದೆವು ನೆರವಿನಲಿ ಪುರು
ಹೂತ ಶಿಖಿ ಯಮ ನಿರುತಿ ವರುಣ ಸಮೀರ ಹರಸಖರು
ಆತುಕೊಳಲಿಂದೀ ಸುಯೋಧನ
ಜಾತಪುಣ್ಯನೊ ಧರ್ಮಪುತ್ರನೆ
ಭೂತಭಾಗ್ಯನೊ ಕಾಣಲಹುದೈ ಶಲ್ಯ ಕೇಳೆಂದ ೧೦

ಸರಳೊಳಾಯ್ದು ಮಹಾಸ್ತ್ರವನು ಸಂ
ವರಿಸಿದನು ಬತ್ತಳಿಕೆಯಲಿ ಮಾ
ರ್ತಿರುವ ಬೆರಳಲಿ ತೀಡಿ ಕೊಪ್ಪಿನ ಬಲುಹನಾರೈದು
ತಿರುವನೇರಿಸಿ ಮಿಡಿಮಿಡಿದು ಪೊಂ
ಬರಹದವನಿನ್ನೂರು ಚಾಪವ
ನಿರಿಸಿದನು ಕೆಲದವರ ತೊಲಗಿಸಿ ವಾಮಭಾಗದಲಿ ೧೧

ತಿರುವ ಬೆರಳಲಿ ಮಿಡಿದು ಕೆನ್ನೆಗೆ
ಬರಸೆಳೆದು ಉಳಿವಡೆದು ಹೂಡಿದ
ಸರಳ ಕಿವಿವರೆಗುಗಿದು ಬೈಸಿಗೆದೆಗೆದು ಠಾಣದಲಿ
ಪರಿವಿಡಿಯನಾರೈದು ಗರುಡಿಯ
ಗುರುವ ನೆನೆದನು ವೈರಿಸೇನೆಯ
ತರುಬಿ ನಿಂದನು ಕಾದುವಣ್ಣನ ಬೇಗ ಕರೆಯೆನುತ ೧೨

ಬೆದರಲೇತಕೆ ನಮ್ಮ ನಾದನಿ
ಮದವಳಿಗ ನೀನಾದರೊಡಹು
ಟ್ಟಿದನು ನೀನಹೆಯೆನಗೆ ನಿನ್ನಲಿ ಬೇರೆ ಭಯವೇನು
ಸದನವಿದು ಪತಿಶೂನ್ಯ ತಾನೆಂ
ಬುದು ಪತಿವ್ರತೆಯಲ್ಲಿಯನುಚಿತ
ವಿದು ವಿಚಾರವ ಬಲ್ಲೆ ನೀನೆಂದಳು ಸರೋಜಮುಖಿ ೧೭

ಅಹಹ ಪಾತಿವ್ರತ್ಯವತಿ ಸ
ನ್ನಿಹಿತವಲ್ಲಾ ನಿನಗೆ ಹಲಬರ
ಮಹಿಳೆ ಸತಿಯೆನಿಸುವರೆ ಸೂಳೆಯರೇಕ ಪುರುಷರಲಿ
ವಿಹರಿಸುವರೇ ಲೋಕಧರ್ಮದ
ರಹಣಿ ರಹಿಸುವುದೈಸಲೇ ನಮ
ಗಿಹುದು ಮತವಲ್ಲದೊಡೆ ಮಾಣಲೆನುತ್ತ ಮುರಿದೆದ್ದ ೧೮

ತರಳೆ ಮಿಗೆ ತಲ್ಲಣಿಸಿ ತಳಿರೋ
ವರಿಯ ಹೊಗುತಿರಲಟ್ಟಿ ಮೇಲುದ
ಬರಸೆಳೆದು ತುರುಬಿಂಗೆ ಹಾಯ್ದನು ಹಿಡಿದು ಕುಸುಬಿದನು
ಒರಲಿದಳು ಹಾ ಭೀಮ ಹಾ ನೃಪ
ವರ ಧನಂಜಯ ಹಾಯೆನುತ ಕಾ
ತರಿಸೆ ಕಮಲಾನನೆಯ ಕಂಠವನೌಚಿ ಹೊರವಂಟ ೧೯

ರಾಣಿವಾಸವಲಾ ಯುಧಿಷ್ಠಿರ
ನಾಣೆ ಬಿಡು ಬಿಡೆನುತ್ತ ಸುಜನ
ಶ್ರೇಣಿಯಡ್ಡೈಸಿದೊಡೆ ಬೀಸಿದನವನು ಖಂಡೆಯವ
ರಾಣಿ ನಡೆ ನಡೆ ನಮಗೆ ಪಾಂಡವ
ರಾಣೆಯಿಟ್ಟರು ಮುನಿಗಳಿಲ್ಲಿಹ
ಜಾಣು ತಪ್ಪುವುದೆನುತ ಹೊರವಂಡಿಸಿದನಾಶ್ರಮವ ೨೦

ಒಡನೆ ಬಂದನು ಧೌಮ್ಯಮುನಿಯಡಿ
ಯಿಡುತ ಘನ ರಕ್ಷೋಘ್ನ ಸೂಕ್ತವ
ನಡಿಗಡಿಗೆ ಜಪಿಸುತ ಜಯದ್ರಥ ಬೇಡ ಬೇಡೆನುತ
ಮಿಡುಕದೈತರಲೌಕಿ ಹೊಕ್ಕನು
ಪಡೆಯ ಮಧ್ಯದ ರಥವನೇರಿಸಿ
ನಡೆದನವ ಸೂಟಿಯಲಿ ತಾಟಿಸಿ ರಥದ ವಾಜಿಗಳ ೨೧

ಚೆಲ್ಲಿತೀ ಮುನಿಯೂಥ ದೆಸೆದೆಸೆ
ಗೆಲ್ಲ ಹರಿದುದು ಬಾಯ ಮೊರೆಗಳ
ಪಲ್ಲವದ ಪಾಣಿಗಳ ಸೂಸುವ ಸಮಿಧೆ ಬರ್ಹಿಗಳ
ತಲ್ಲಣದ ತೋಪಿನ ವಿಷಾದದ
ವಲ್ಲರಿಯ ಹೂದೊಡಬೆಗಳ ಹೊ
ಯ್ವಳ್ಳಿಗಳ ಮುನಿಜನವ ಕಂಡರು ಪಾಂಡುನಂದನರು ೨೨

ಏನು ಗಜಬಜ ಋಷಿ ಜನಂಗಳಿ
ಗೇನಪಾಯವೊ ನಮ್ಮ ಬನದಲಿ
ದಾನವರ ದುರ್ಘಟದ ದುರ್ನಯವಲ್ಲಲಾಯೆನುತ
ಆ ನರೇಂದ್ರ ಮನೋಹರದ ಮೃಗ
ಯಾ ನಿರೂಢಿಯ ಬಿಸುಟು ಬಂದನಿ
ದೇನಿದೇನೂಳಿಗವೆನುತ ಬೆಸಗೊಂಡನವರುಗಳ ೨೩

ಹೇಳಲಮ್ಮೆವು ಜೀಯ ಸಿಂಧು ನೃ
ಪಾಲ ದಶಮುಖನಾದನಾ ಪಾಂ
ಚಾಲೆ ಜಾನಕಿಯಾದಳೀ ವಿಪಿನ ರಾಜಕಾರ್ಯವಿದು
ಮೇಲೆ ರಾಘವತನದ ತೋಟಿಯ
ತೋಳ ಬಿಂಕವು ನಿಮ್ಮದೆನೆ ನರ
ಪಾಲನಾಜ್ಞೆಯಲಂದು ಹರಿದರು ಭೀಮ ಫಲುಗುಣರು ೨೪

ಐದುವರೆ ರಿಪು ಮರಣ ಸಿದ್ಧಿಯ
ಕೈದು ಮನೆಯಲ್ಲಿಹುದು ಬೇಂಟೆಯ
ಕೈದು ಕೈಯಲಿ ಸಮಯವಿಲ್ಲ ಮಹಾಸ್ತ್ರಕರ್ಷಣಕೆ
ಮೈದುನನ ಮೈಸರಸಕೀ ಹುಲು
ಗೈದು ಸಾಲದೆ ತಂಗಿ ದುಸ್ಸಳೆ
ಯೈದೆತನ ಬಯಲಾಯ್ತೆನುತ ಬೆಂಬತ್ತಿದರು ಖಳನ ೨೫

ಕಂಡರಡವಿಯಲವನನೆಲವೋ
ಭಂಡ ಫಡ ಹೋಗದಿರೆನುತ ಕೈ
ಕೊಂಡು ಸುರಿದರು ಸರಳನಾ ಪಿಂಗಳಿಯ ಸೇನೆಯಲಿ
ಭಂಡರಿವದಿರು ತಾವು ಕಡುಹಿನ
ಖಂಡೆಯದ ಸಿರಿವಂತರಿವರು
ದ್ದಂಡ ಭಟರೆನುತಾ ಜಯದ್ರಥ ನಿಲಿಸಿದನು ಬಲವ ೨೬

ಸೆರೆ ಸಹಿತ ತಾನೈದುವೆನು ನಿಜ
ಪುರವ ನೀವಾನುವುದು ಭೀಮನ
ನಿರಿವುದರ್ಜುನನೊಡನೆ ನಿಮಗುಗ್ಗಡದ ಸಮರವಿದು
ಇರಿತಕಂಜದ ಸ್ವಾಮಿಕಾರ್ಯದ
ಹೊರಿಗೆಯುಳ್ಳ ನವಾಯ ಬಿರುದಿನ
ಮುರುಕವುಳ್ಳ ಭಟಾಳಿ ನಿಲುವುದು ತಡೆವುದರಿ ಭಟರ ೨೭

ಎಂದು ವಾಘೆಯ ಕೊಂಡು ರಥವನು
ಮುಂದೆ ದುವ್ವಾಳಿಸಿದನಿತ್ತಲು
ಹಿಂದೆ ನಿಂದುದು ಗಜರಥಾಶ್ವ ಪದಾತಿ ಚತುರಂಗ
ಇಂದುವದನೆಯ ತೇರು ಹಾಯ್ದುದೆ
ಮುಂದೆ ಹೊಳ್ಳುಗರಡ್ಡವಿಸಿದರೆ
ಹಿಂದೆ ಹೊಲ್ಲೆಹವೇನೆನುತ ಹೊಕ್ಕೆಚ್ಚನಾ ಪಾರ್ಥ ೨೮

ಮುರಿದು ಮರನನು ಭೀಮನಹಿತರ
ತುರುಬಿದನು ಮಲೆತಾನೆಗಳ ಹೊ
ಕ್ಕೆರಗಿದನು ತುರುಗಿದನು ಭಟರಭ್ರದವಿಮಾನದಲಿ
ಜುರಿತಡಗಿನಿಂಡೆಗಳ ಮಿದುಳಿನ
ನಿರಿಗರುಳ ನೆಣ ವಸೆಯ ಜಿನಿಯಲಿ
ಮೆರೆದುದಾ ಮರನಲ್ಲಿ ತಳಿತುದು ಹೂತುದೆಂಬಂತೆ ೨೯

ಸಾಯಸಾವತಿ ಬಲರನೆಲ್ಲರ
ಕಾಯಲಿರಿಸಿಧ ಭಟರ ತಲೆಗಳು
ಬೀಯವಾದುವು ಮತ್ತೆ ರಪಣವ ತೋರಿಸಾ ರಣಕೆ
ರಾಯರಂಗವನೆತ್ತ ಬಲ್ಲನಿ
ಜಾಯುಧವ ಹಿಡಿ ನಿನ್ನ ಬಿರುದಿನ
ಬಾಯಲೆರೆವುದು ಮಧುವನೆನುತುರವಣಿಸಿದನು ಭೀಮ ೩೦

ಧನುವ ಕೊಂಡನು ಸರಳ ಸಾರದ
ಲನಿಲಜನ ಮುಸುಕಿದನು ಪಾರ್ಥನ
ಮೊನೆಗಣೆಯು ತರಿದೊಟ್ಟಿ ಬೊಬ್ಬಿರಿದನು ಜಯದ್ರಥನು
ತನತನಗೆ ಸೈಂಧವನ ಬೆಂಗಾ
ಹಿನ ಭಟರು ಭಾರಣೆಯಲೊದಗಿದ
ರನಿಬರನು ನಿಮಿಷಾರ್ಧದಲಿ ನಿರ್ಮೈಸಿದನು ಪಾರ್ಥ ೩೧

ಅಂಜದಿರು ಕಮಳಾಕ್ಷಿ ಧೌಮ್ಯ ನಿ
ರಂಜನನು ನಿನಗಿಂದು ಸುತಿ ಪವಿ
ಪಂಜರವಲಾಯೆನುತ ಹಾಯ್ದನು ಪವನಸುತ ರಥಕೆ
ಕುಂಜರನು ಕೈಯಿಕ್ಕೆ ನಿಲುಕದೆ
ಕಂಜವನವನಿಲಜನ ಜಾಡಿಯು
ಜಂಜಡಕೆ ದಿಟ್ಟನೆ ಜಯದ್ರಥನರಸ ಕೇಳೆಂದ ೩೨

ಸೆಳೆದೊಡಾಯುಧವಾತನೀತನ
ನಿಲುಕಿ ಹೊಯ್ದನು ದಂಡೆಯಿಂದದ
ಕಳಚಿ ಮಾರುತಿ ಹೊಕ್ಕಡವ ಚಿಮ್ಮಿದನು ಚೀಲಯವ
ಖಳನ ಬಾಹುವನೊದೆದು ತುರುಬಿಗೆ
ನಿಲುಕಿ ಕುಸುಬಿದನವನ ಗೋಣಿನ
ಲಲಗ ಹೂಡಲು ಕಂಡನರ್ಜುನನಾ ವೃಕೋದರನ ೩೩

ಭೀಮ ಬಿಡಿಸದಿರವನ ಗಂಟಲ
ನೀ ಮದಾಂಧನನೊಯ್ದು ಕೆಡಹುವ
ಭೂಮಿಪತಿಯಂಘ್ರಿಯಲಿ ಕಾಯಲಿ ಮುನಿದು ಮೇಣ್ಕೊಲಲಿ
ತಾಮಸನ ಬಿಗಿಯೆನಲು ನಗುತ
ದ್ದಾಮನೆಂದನು ಕೊಲುವೆನೆಂದೇ
ಕಾಮಿಸಿದೆನೈ ಪಾರ್ಥ ಕೆಡದೇಯೆನ್ನ ಸಂಕಲ್ಪ ೩೪

ನೆಸೆಯದಿರು ಸಂಕಲ್ಪ ಹಾನಿಯು
ನಸುಚಿತಕೆ ಮನ ತಾರದಿರು ಮಾ
ನಿನಿಯಿರಲಿ ರಥದಿಂದ ಕುನ್ನಿಯ ಕೆಡಹು ಧಾರುಣಿಗೆ
ಮುನಿಪನೇರಲಿ ರಥದ ವಾಜಿಯ
ನನುಗೊಳಿಸಿ ಸಾರಥ್ಯದಲಿ ಬರ
ಲೆನುತ ಭೀಮನ ಮನದ ಖತಿಯನು ಬಿಡಿಸಿದನು ಪಾರ್ಥ ೩೫

ವೈರಿ ಬಾಹುದ್ವಯವ ಬದ್ದಿಗೆ
ದಾರದಲಿ ಕಟ್ಟಿದನು ನಾರೀ
ಚೋರ ನಡೆ ನಡೆಯೆನುತ ತಿವಿದನು ಬಿಲ್ಲ ಕೊಪ್ಪಿನಲಿ
ಕೌರವೇಂದ್ರನ ಮತವೊ ನಿನ್ನ ವಿ
ಕಾರವೋ ಹೆಂಗಳ ವಿದ್ಯೆಯ
ನಾರು ಕಲಿಸಿದರೆನುತ ತಂದರು ಧರ್ಮಜನ ಹೊರೆಗೆ ೩೬

ಸಿಂಧು ಭೂಪನಲಾ ಭುಜಾಗ್ರದ
ಬಂಧನವ ಬಿಡು ಭೀಮ ಶಿವ ಶಿವ
ನೊಂದನೈ ನಿಷ್ಕರುಣಿಗಳು ನೀವೆಂದನವನೀಶ
ಕೊಂದು ಬಿಸುಡುವ ನೇಮ ಕಂದ
ರ್ಪಾಂಧಕನನುಳುಹುವೊಪಿತನಗಿ
ನ್ನಿಂಧನವ ಮಾಡಿಸುವುದೈಸಲೆಯೆಂದನಾ ಭೀಮ ೩೭

ಹದನಿದೊಳ್ಳಿತು ಹಂಗಿ ವೈಧ
ವ್ಯದಲಿ ನವೆಯಳೆ ಸುಬಲ ನಂದನೆ
ಯುದರ ಕುಂತೀದೇವಿಯುದರಕೆ ಭಿನ್ನ ಭಾವನೆಯೆ
ಕದನದಲಿ ಹಿಡಿವಡೆದವರ ಕೊಲು
ವುದು ನರೇಂದ್ರರ ಧರ್ಮವಲ್ಲಿ
ನ್ನಿದರ ಮೇಲಾವರಿಯೆವೆಂದನು ಧರ್ಮನಂದನನು ೩೮

ಈತನಳಿಯದೆ ಮತ್ಪ್ರತಿಜ್ಞಾ
ಖ್ಯಾತಿ ಮಸುಳದೆ ತಿದ್ದುವನುವನು
ಭೂತಳಾಧಿಪ ನೀವು ಬೆಸಸುವುದೆನಲು ಮುನಿಜನವ
ಆತ ನೋಡಿದನಾವುದಿದಕನು
ನೀತಿಯೆನೆ ಧೌಮ್ಯಾದಿ ಸುಜನ
ವ್ರಾತ ನಿಶ್ಚೈಸಿದರು ಮನದಲಿ ಧರ್ಮ ನಿರ್ಣಯವ ೩೯

ಮಾನಧನರಿಗೆ ವಧೆಯೆನಿಪುದಭಿ
ಮಾನಭಂಜನವಿವನು ಕಟ್ಟಭಿ
ಮಾನಿ ಭಂಗಿಸಿ ಬಿಟ್ಟೋಡೀತಂಗಿದುವೆ ಮರಣವಲ
ಈ ನುಡಿಯು ಸಲಿಸಿದೊಡೆ ಇವನಪ
ಮಾನಹತನಿದು ಧರ್ಮ ನಿಶ್ಚಯ
ವೇನು ಸಂಶಯವಿಲ್ಲೆನುತ ನುಡಿದುದು ಮುನಿಸ್ತೋಮ ೪೦

ಅಹುದೆನುತ ಕಲಿಭೀಮ ಮಾಡಿದ
ರಹವನದನೇನೆಂಬೆನೈ ಕೂ
ರಿಹ ಕಠಾರಿಯ ಹಣೆಗೆಯಲಿ ಬಾಚಿದನು ಸಿರಿಮುಡಿಯ
ಅಹಿತ ಶಿರವಿದಲಾಯೆನುತ ಗೃಹ
ಮಹಿಳೆಯರು ವಿಹಿತಾಂಗುಲಿಯ ಸಂ
ಪ್ರಹರಣದಿ ಪರಿಭವಿಸಿದರು ಘೊಳ್ಳೆನಲು ನಿಖಿಳಜನ ೪೧

ಬಿಟ್ಟರೀತನ ತೋಳ ಹಿಂಗೈ
ಗಟ್ಟುಗಳನೆಲೆ ಕುನ್ನಿ ಹೋಗೆನೆ
ಕೆಟ್ಟ ಕೇಡದನೇನ ಹೇಳುವೆನಾ ಜಯದ್ರಥನ
ಬೆಟ್ಟದಿಂದುರುಳುವೆನೊ ಹಾಸರೆ
ಗಟ್ಟ ಹೊಗುವೆನೊ ಮಡುವನೆನುತಡಿ
ಯಿಟ್ಟನಂತಃಕಲುಷ ಚಿತ್ತ ದುರಂತ ಚಿಂತೆಯಲಿ ೪೨

ಚಿಂತಿಸಿದೊಡೇನಹುದು ಹೊಗುವೆನು
ಕಂತುಮಥನನ ಮರೆಯನಿವದಿರಿ
ಗಂತಕನು ತಾನಹೆನು ಗೆಲುವೆನು ಬಳಿಕ ಬವರದಲಿ
ಭ್ರಾಂತಿಯೇ ಬಿಡು ತನ್ನನೆನುತ ಪು
ರಾಂತಕ ಧ್ಯಾನದಲಿ ವಿಮಲ
ಸ್ವಾಂತನೇಕಾಗ್ರದಲಿ ಭಜಿಸಿದನಿಂದುಶೇಖರನ ೪೩

ಇವನ ನಿಷ್ಠೆಗೆ ಮೆಚ್ಚಿ ಗೌರೀ
ಧವನು ಮೈದೋರಿದನು ರಾಜ
ಪ್ರವರ ಕೊಟ್ಟೆನು ಬೇಡು ಸಾಕು ಭವನ್ಮನೋರಥವ
ವಿವರಿಸೆನೆ ಕಂದೆರೆದು ಮುಂದಿಹ
ಶಿವನ ಕಂಡನು ಮೈಯ ಚಾಚಿದ
ನವನಿಯಲಿ ಜಯ ಜಯ ಮಹೇಶ ನಮಃಶಿವಾಯೆನುತ ೪೪

ಅರಸ ಕೇಳೈ ಶಕ್ರ ಸೂರ್ಯರ
ಮರುಳುತನವೋ ಮೇಣು ಮರ್ತ್ಯಾ
ಚರಣೆಗಳ ನಾಟಕವೊ ಮೇಣ್ ಸಾಂಸಾರಿಕ ಭ್ರಮೆಯೊ
ನರನಲೇ ಲೋಕೈಕವೀರನು
ಧಿರುರೆ ಮಝು ಭಾಪೆಂಬ ಸಡಿಫಡ
ಸರಿಯೆ ಕರ್ಣಂಗೆಂಬ ಕಳಕಳ ಕೇಳಲಾಯ್ತೆಂದ ೧೩

ಈ ಪರಿಯಲೆರಡಿಟ್ಟ ಜಗದಾ
ಳಾಪವನು ಕರ್ಣಾರ್ಜುನರ ಪ
ಕ್ಷೋಪಚಾರ ಪ್ರಕಟ ಕಲಹ ಕಠೋರ ಕಳಕಳವ
ಆ ಪುರಂದರ ಕಮಲಸಖರಾ
ಟೋಪವನು ಭುವನಾಪಘಾತವ
ನಾ ಪಿತಾಮಹನರಿದು ಸಂತೈಸಿದನು ಸಾಮದಲಿ ೧೪

ಅರಸ ಚಿತ್ತೈಸುಭಯಬಲದು
ಬ್ಬರದ ಬಹುವಿಧವಾದ್ಯರವದು
ಬ್ಬರವ ಮುಕ್ಕಳಿಸಿತು ಪಾಠಕರ ನಿಕರ ನಿರ್ಘೋಷ
ಸುರರ ಕಳಕಳವೀ ಧ್ವನಿಯನು
ತ್ವರಿಸಿತೀ ಬಲುಗಜಬಜವ ನಡ
ತರದೊಳಿಕ್ಕಿತು ಕರ್ಣಪಾರ್ಥರ ಚಾಪಟಂಕಾರ ೧೫

ಅಳವಿಯಂಕೆಯ ಮೀರಿ ರಥರಥ
ಹಳಚಿದವು ಬಹುಮಾನದಲಿ ವೆ
ಗ್ಗಳಿಸಿದವು ವೇಗಾಯ್ಲವಾಜಿಯ ಲಳಿಯ ಲಹರಿಯಲಿ
ಹೊಳೆದವೆಡಬಲವಾಘೆ ಸನ್ನೆಯ
ಸುಳಿವ ಸುಭಟರ ಬವರಿ ಭಂಗಿಯ
ಲುಳಿಯ ಸೂತರ ರೇಖೆ ಸೆಳೆದುದು ಜನದ ಕಣ್ಮನವ ೧೬

ಉಪ್ಪರಿಸಿ ಲಳಿಯೆದ್ದು ಸೂತರ
ಚಪ್ಪರಣೆಗಳ ಮೀರಿ ಖುರದಲಿ
ಖೊಪ್ಪರಿಸಿ ಹೊಯ್ದಾಡಿದವು ಹೇಷಿತದ ಹಲ್ಲಣೆಯ
ದರ್ಪದಲಿ ತೇಜಿಗಳು ತೇಜಿಯ
ತಪ್ಪಡಿಗೆ ಲಟಕಟಿಸಿದವು ರಣ
ವೊಪ್ಪಿತೈ ಕರ್ಣಾರ್ಜುನರ ರಥವಾಜಿ ವಾಜಿಗಳ ೧೭

ಅರಸ ಕೇಳೇನೆಂಬೆನೈ ಕಪಿ
ವರನ ಕೋಳಾಹಳವ ಕದನವ
ಕರೆದು ನಖದಲಿ ಹೊಯ್ದು ಕರದಲಿ ಕಾದುವಂದದಲಿ
ಮುರಿದು ಬಾಲದಲಡಿಗಡಿಗೆ ಬೊ
ಬ್ಬಿರಿದು ಹೆಣಗಿದನಿನಸುತನ ಭಾ
ಸುರದ ಹೇಮಧ್ವಜದ ಹಲಗೆಯ ಹಸ್ತಿಕಕ್ಷದಲಿ ೧೮

ಏನ ಹೇಳುವೆ ಸೂತತನದಭಿ
ಮಾನವೇರಿದ ಪರಿಯನಾ ವೇ
ಷಾನುರೂಪ ವಿಚೇಷ್ಟೆಯನು ಲೋಕೈಕ ಚೇಷ್ಟಕನ
ನೀನೆನಗೆ ಸಾರಥಿತನದಲಿ ಸ
ಮಾನನೇ ಫಡ ತುರುಗಹೃದಯ
ಜ್ಞಾನ ನಿನಗೇಕೆನುತ ಶಲ್ಯನ ಜರಿದನಸುರಾರಿ ೧೯

ಅಕಟ ಗೋರಕ್ಷಕನೆ ಪಶುಪಾ
ಲಕರ ಮಕ್ಕಳೊಳಶ್ವಹೃದಯ
ಪ್ರಕಟ ವಿಜ್ಞಾನಂಗಳುದಿಸಿದವೇ ವಿಶೇಷವಲಾ
ವಿಕಳರಾವಿದನೆತ್ತಬಲ್ಲೆವು
ಸಕಲಗುಣಸರ್ವಜ್ಞ ನಿನಗೀ
ಬಕವಿಡಂಬನವೇಕೆನುತ ಮೂದಲಿಸಿದನು ಶಲ್ಯ ೨೦

ಧಾರುಣೀಪತಿ ಕೇಳು ಬಿಲುಂಟಂ
ಕಾರ ಕದನೋಪಕ್ರಮದೊಳೋಂ
ಕಾರವಾಯಿತು ಕಾರ್ಮುಕಸ್ವಾಧ್ಯಾಯವಿಸ್ತರಕೆ
ಭೂರಿ ಬಹುವಿಧ ಬಾಣವರ್ಗವಿ
ಹಾರವೆಸೆದುದು ಕರ್ಣಪಾರ್ಥರು
ದಾರ ಸಮರಾರಂಭವಳ್ಳಿರಿದುದು ಜಗತ್ರಯವ ೨೧

ಸೂತಜಾತಿಯೊಳೀ ಧನುರ್ವೇ
ದಾತಿಶಯವೆಂತಾಯ್ತು ಪಾರ್ಥಿವ
ಜಾತಿಯಧ್ಯಾಪನವಿಧಾನನಿಯೋಗವಾವನದು
ಪೂತು ಮಝುರೇ ಸ್ವೈರಿಸಾದಡೆ
ಸೂತನಂದನ ಎನುತ ಬಾಣ
ವ್ರಾತದಲಿ ಹೊದಿಸಿದನು ಕರ್ಣನ ರಥವನಾ ಪಾರ್ಥ ೨೨

ಹರೆಗಡಿದನಾ ಕ್ಷಣದೊಳಾತನ
ಶರವನೆಲವೋ ಪಾರ್ಥ ನಿಮ್ಮ
ವರಿಗೆ ಜನಕನು ಪಾಂಡು ನೀವಧ್ಯಯನಯೋಗ್ಯರಲಾ
ಧರೆಯೊಳಗ್ಗದ ರಾಜಸೂಯಾ
ಧ್ವರಕೆ ಪತ್ನಿಯೊ ಯೋಗ್ಯೆ ಯಜಮಾ
ನರುಗಳೈ ನೀವೇನಹೇಳುವವೆನುತ ತೆಗೆದೆಚ್ಚ ೨೩

ಸೂಳೆಯರು ಗಡ ಸಾಮಗಾನವ
ನಾಳಿಗೊಂಬರು ಗಡ ದಿನೇಶನ
ಮೇಳವನು ಮುದುಗೂಗೆ ಮೆಚ್ಚದು ಹಾನಿಯೇನದಕೆ
ಆಳುತನದಂಘವಣೆಯುಂಟ್ಬೆ
ಬೋಳೆಯಂಬಿನಲಾಡಿಕೊಳುಬಿಡು
ಜಾಳುನುಡಿಗಳ ಜವಳಿವಾತನೆನುತ್ತ ನರನೆಚ್ಚ ೨೪

ಆತನೆಚ್ಚ ಶರೌಘವನು ಕಡಿ
ದೀತ ನುಡಿದನು ಹೊಳ್ಳುವಾತಿನ
ಹೋತ ದರಿಹಿಗಳಿವರುಪಾಧ್ಯರು ನಾವು ಸೂಳೆಯರು
ಏತಕೀ ಬಳೆಗೈಗೆ ಬಿಲು ಹಿಣಿ
ಲೇತಕೀ ಚೊಲ್ಲೆಹಕೆ ಚಲ್ಲಣ
ವೇತಕೀ ಹೆಣ್ಣುಡಿಗೆಗೆನುತೆಚ್ಚನು ಧನಂಜಯನ ೨೫

ಕಾಣೆಸಿದನ್ನೆ ಕೌರವನ ಹರಿ
ವಾಣದಾಯದ ಹಂತಿಕಾರನು
ಕಾಣಿಕೊಂಕನು ನಮ್ಮ ಚರಿತಕೆ ಹಾ ಮಹಾದೇವ
ಜಾಣತನವೊಳ್ಳೆಯದು ಧರ್ಮಜ
ನಾಣೆ ಬಲ್ಲೆನು ದಿಟವೆನುತ ಬಲು
ಸಾಣೆಯಲಗಿನ ಸರಿಯ ಸುರಿದನು ಸವರಿ ರಿಪುಶರವ ೨೬

ರಾಯತನದಲಿ ಬೆರೆತು ರಾಜ್ಯ
ಶ್ರೀಯ ನೆರೆ ಹೋಗಾಡಿ ಪರರಿಗೆ
ಜೀಯ ಬೆಸಸುವುದೆಂದು ಜೀವಿಸುವವರು ನಾವಲ್ಲ
ರಾಯತನವೆಮಗಿಲ್ಲ ಕೌರವ
ರಾಯನೋಲೆಯಕಾರರಹೆವೆ
ಮ್ಮಾಯತವು ತಾ ಬೇರೆನುತ ಕವಿದೆಚ್ಚನಾ ಕರ್ಣ ೨೭

ಆವ ಹಂಜರಕೂಳಿ ಮೊಗವಲೆ
ಯಾವಗಾಣವು ಬೀಸುವಲೆಯುರೆ
ತೀವಿದುದಕದ ಮಡುವೆಯಿದು ಸಂಗ್ರಾಮಭೂಮಿ ಕಣಾ
ಹೇವವಿಲ್ಲದೆ ಕಾದಬೇಹುದು
ಧೀವರರವೋಲ್ ತಡಿಕೆವಲೆಯಲಿ
ಲಾವುಗೆಯ ಹೊಯ್ದಂದವಲ್ಲೆನುತೆಚ್ಚನಾ ಪಾರ್ಥ ೨೮

ನೀವು ನುಡಿದುದು ಹಂಸಿಯೆ ಕೂಳಿಯ
ತೀವಿ ತೀವೆವು ಕೊಳಚೆಗಳ ಬಾ
ಣಾವಳಿಯ ತಡಿಕೆಯಲಿ ಹೊಯ್ವೆವು ನಕುಲ ಜಾತಿಯನು
ನಾವು ನಿಮ್ಮಯ ಹೃದಯಸರಸಿಯ
ಜೀವಮತ್ಸ್ಯಕೆ ಗಾಣವಿಕ್ಕುವ
ಧೀವರರು ನೋಡೆನುತ ಪಾರ್ಥನನೆಚ್ಚನಾ ಕರ್ಣ ೨೯

ಬೇರೆ ಕೆಲವಂಬುಗಳು ಗಡ ವೈ
ದೋರಿದವು ನಿನಗೆಂಬರವ ನೀ
ತೋರಿಸಾ ನಿನಗಾಯ್ತು ಗಡ ಶಶಿಮೌಳಿಯುಪದೇಶ
ಹಾರುಗಣೆಗಳ ಹರಸಿ ಹೆಮ್ಮೆಯ
ಬೀರಿ ಚದುರಿಗತನವ ಮೆರೆದರೆ
ನೀರನೆಂಬರೆ ನಿನ್ನನೆನುತೆಚ್ಚನು ಧನಂಜಯನ ೩೦

ಮೊಲನ ಬೇಂಟೆಗೆ ತಿವಿದು ಹಾಸವ
ಕಳಚುವರೆ ಕೇಸರಿಯನಕಟಾ
ಕೊಳಚೆಯುದಕಕೆ ಕೊಂಬುದೇ ಹರಗೋಲ ಬಾಡಗೆಯ
ಗಳಹತನವೇ ಹರನ ಬಾಣಾ
ವಳಿಗೆ ಗುರಿಯೇ ನೀನೆನುತ ಕೈ
ಚಳಕದಲಿ ರಿಪುಶರವ ಖಂಡಿಸಿ ತಂಳುಕಿದನು ಪಾರ್ಥ ೩೧

ಡೊಂಬಿಯೇಕೈ ಪಾರ್ಥ ಬಯಲಾ
ಡಂಬರವ ನಾವರಿಯೆವೇ ತ್ರಿ
ಯಂಬಕಾಸ್ತ್ರದ ತೊಡಹವಲ್ಲಾ ನಿನ್ನ ವಿಕ್ರಮಕೆ
ಶಂಬರಾರಿಯ ಕಣೆಯವೊಲು ನಿ
ನ್ನಂಬು ಬಲ್ಲಿದವೆಂದು ಕೆಲದವ
ರೆಂಬರೈ ಹುಸಿಯಲ್ಲೆನುತ ರಿಪುಶರವ ಖಂಡಿಸಿದ ೩೨

ಲೇಸನಾಡಿದೆ ಕರ್ಣ ನೀನೇ
ನೈಸುಖೂಳನೆ ನಿನ್ನವಂದಿಗ
ವೇಷ ವಧುಗಳನುಗಿವಡಿವು ಮದನಾಸ್ತ್ರವೇಕಲ್ಲ
ಈ ಶರಾವಳಿ ಕುಸುಮಮಯ ನೀ
ನೈಸೆ ವನಿತಾಮಯನು ಪುಷ್ಪಶ
ರಾಸನನು ತಾನೆನುತ ಕಣೆಗೆದರಿದನು ಕಲಿಪಾರ್ಥ ೩೩

ಗಂಡುಗಲಿ ನೀ ಕಾಮನೈ ಕೈ
ಕೊಂಡೆವೈ ತಪ್ಪೇನು ನಾವೇ
ಖಂಡಪರಶುಗಳಾಗೆವೇ ಭವದೀಯ ವಿಗ್ರಹಕೆ
ಕಂಡೆ ನಿನ್ನನು ಸುಭಟವೇಷದ
ಭಂಡನೋ ಫಡ ಹೋಗೆನುತ ಪರಿ
ಮಂಡಳಿತ ಕೋದಂಡನೆಚ್ಚನು ಕರ್ಣನರ್ಜುನನ ೩೪

ನಿಮಿಷ ನಿಮಿಷಕೆ ಹೆಚ್ಚಿತಿಬ್ಬರ
ತಿಮಿರಮಯ ಘನರೋಷವಿಬ್ಬರ
ಸಮರಸಾಹಸಶೌರ್ಯವಿಬ್ಬರ ಕಣೆಯ ಕೈಚಳಕ
ಶ್ರಮವಿಧಾನವ್ಯಾಪ್ತಿಯಿಬ್ಬರ
ಗಮಕವಿಬ್ಬರ ಗಾಢವಿಬ್ಬರ
ಸಮತೆಯಿಬ್ಬರ ಗರ್ವವಿಬ್ಬರ ತೀವ್ರತರತೇಜ ೩೫

ಜನಪ ಕೇಳೈ ಬಳಿಕ ಕರ್ಣಾ
ರ್ಜುನರ ಸಮಸಂಗ್ರಾಮವನು ಗುರು
ತನುಜ ಕಂಡನು ಕೌರವೇಂದ್ರನ ಬಳಿಗೆ ನಡೆತಂದು
ತನತನಗೆ ತೊಲಗಿತು ಮಹೀಶರ
ಮೊನೆಯ ಸಮರಥರಾಜಿ ಗುರುನಂ
ದನನಲಾ ಎನುತಿದಿರುವಂದನು ನಿನ್ನ ಮಗ ನಗುತ ೩೬

ಏನು ಬಂದಿರಿ ಕಾಳೆಗದ ಹದ
ನೇನು ಪಾಂಡವರಾಜತಿಮಿರಕೆ
ಭಾನುವಿನ ಭಾರಣೆಯ ಬಲುಹೇ ನಿಮ್ಮ ದಳಪತಿಯ
ಆನಲಳವೇ ಪಾರ್ಥನೀತನ
ನೇನು ಹದನೈ ರಾಜಕಾರ್ಯನಿ
ಧಾನವೇನೆಂದರಸ ನುಡಿದನು ದ್ರೋಣನಂದನನ ೩೭

ಏನನೆಂಬೆನು ಜೀಯ ಕರ್ಣನ
ನಾನುವಡೆ ಫಲುಗುಣನ ಪಾಡೆ ಕೃ
ಶಾನುನೇತ್ರನೊ ಕೈಟಭಾರಿಯೊ ಕಮಲಸಂಭವನೊ
ಆ ನಿರೂಢಿಯ ದೊರೆಗಳಿವನ ಸ
ಮಾನರೇ ಗುಣದಲಿ ಸಮತ್ಸರ
ಮಾನಿಸನೆ ನಿನ್ನಾಣೆ ಭಾರದ್ವಾಜನಾಣೆಂದ ೩೮

ಹರಿ ಮಹೇಶ್ವರರಾಳುತನಕಿ
ಬ್ಬೆರಳು ಮಿಗಿಲರ್ಜುನನ ಬಲುಹೀ
ಧರೆಯರಿಯಲೀ ಹೊತ್ತಿನಲಿ ನಿನ್ನಾತನಗ್ಗಳಿಕೆ
ಸರಿಗೆ ಸಂದುದೆ ಸಾಕು ತೂಗಿದ
ಡರಸ ರವೆ ಕುಂದದು ಪರಸ್ಪರ
ವರಸುಕಾರ್ಯದ ವಾಸಿ ಬಂದುದು ರಾಯ ಕೇಳೆಂದ ೩೯

ಒಮ್ಮೆ ಮುರಿವುದು ವೈರಿದಳ ಮ
ತ್ತೊಮ್ಮೆ ಮುರಿವುದು ನಮ್ಮ ದಳ ಬಳಿ
ಕೊಮ್ಮೆ ಮಕ್ಕಳತಂಡವವರಲಿ ನಮ್ಮ ಥಟ್ಟಿನಲಿ
ನಮ್ಮ ದೆಸೆ ಬಲುದೊರೆಗಳಳಿವಿನೊ
ಳೊಮ್ಮೆ ಹೋಯಿತು ಹೊತ್ತು ರಣದಲಿ
ನಮ್ಮ ವಿಳಸಕೆ ಮೇಲುವಾಸಿ ನೃಪಾಲ ಕೇಳೆಂದ ೪೦

ಜಲವನಂಜುಳಿಯಿಂದ ಮೊಗೆದೀಂ
ಟಲು ನೆನೆಯಲಭ್ರದಲಿ ಗುಹ್ಯಕ
ನುಲಿದನೆಲೆ ನಕುಲಾಂಕ ಮಾಣೆನಗುತ್ತರವ ರಚಿಸಿ
ಬಳಿಕ ಸಲಿಲವನೀಂಟು ಮಾತುಗ
ಳೊಳವು ಮರುಳಾಗದಿರೆನಲು ಢಗೆ
ಗಳುಕಿ ಬಳಲಿದು ಮೇಲೆಯಾಲಿಸಿ ಮಿಾರಿದನು ನುಡಿಯ ೧೮

ಜಡಿಯಲೆರಡಳ್ಳೆಗಳು ಕೊರಳಲಿ
ಕುಡಿದನದಕವನಬುಜದೆಲೆಯಲಿ
ಹಿಡಿದನನಿಬರಿಗಮಳ ಜಲವನು ಮರಳಿ ನಿಮಿಷದಲಿ
ತಡಿಯನಡರಿದು ಧೊಪ್ಪನವನಿಗೆ
ಕೆಡೆದು ಪರವಶನಾದನಿತ್ತಲು
ತಡೆದನೇಕೆಂದಟ್ಟಿದನು ಸಹದೇವನನು ನೃಪತಿ ೧೯

ತವಕ ಮಿಗೆ ನಡೆತಂದು ವೈಮರೆ
ದವನ ಕಂಡನು ಬಹಳ ಢಗೆ ಪರಿ
ಭವಿಸಲುದಕವ ಕುಡಿದು ಬಳಿಕಾರೈವೆನಿದನೆನುತ
ಲವಲವಿಸಿ ತಾಳಿಗೆಯ ತಲ್ಲಣ
ದವನು ಹೊಕ್ಕನು ಕೊಳವನಮಳಾಂ (ಯಾಯ್ತು
ಬುವನು ಮೊಗೆದನು ಮೊಗಕೆ ಮೋಹಲು ಮೇಲೆ ದನಿ ೨೦

ಬಿಡು ಬಿಡೆಲೆ ಸಹದೇವಯೆನ್ನಯ
ನುಡಿಗೆ ಮಾರುತ್ತರವ ಕೊಡು ಮುಂ
ಗೆಡದೆ ಮುಂದಣ ನಿನ್ನವನ ಕಂಡಿಂತು ಮರುಳಹರೆ
ಮಡಿಯಲೆಳಿಸದಿರೆನಲು ಢಗೆಯುವ
ಗಡಿಸೆ ಸೈರಿಸಲರಿಯದುತ್ತರ
ಗೊಡದೆ ಜಲವೀಂಟಿದನು ದಾಂಟಿದುದಸು ಕಳೇಬರವ ೨೧

ಈತನತಿ ವೈಮೆರೆದನತ್ತಲು
ಕಾತರಿಸಿದನು ಭೂಪನಿಬ್ಬರ
ಮಾತು ಮುಖದಿರುಹಿತ್ತು ಶಿಶುಗಳಿಗಾವ ಹದನಾಯ್ತೊ
ತಾತ ಹೋಗೈ ಪಾರ್ಥ ಬಾಲಕ
ರೇತಕತ್ತಲೆ ತಡೆದರೆಂಬುದ
ನೀ ತಿಳಿದು ತಾ ಜಲವನೆನೆ ಕೈಗೊಂಡು ನಡೆತಂದ ೨೨

ಹಿಮದ ಗಾಳಿಯು ಪಥವಿಡಿದು ಮ
ಧ್ಯಮದ ಪಾಂಡವನೈತರುತ ಮುಂ
ದಮಲ ಸರಸಿಯ ತೀರದಲಿ ಕೆಲಿಸಿದ ಮಗ್ಗುಲಲಿ
ಯಮಳರೊರಗಿರೆ ಕಂಡು ಮನದಲಿ
ತಮವ ಹಿಡಿದನು ನೀರುಗುಡಿದೀ
ಮಮತೆ ಮಿಗಲಾರೈವೆನೆನುತಿಳಿದನು ಸರೋವರವ ೨೩

ಚರಣ ವದನವ ತೊಳೆದು ಢಗೆ ಡಾ
ವರಿಸಲಕ್ಷಮನಾಗಿ ಕರದಲಿ
ತೆರೆಗಳನು ತೆಗೆನೂಕಿ ಮೊಗೆದನು ಗರಳಮಯ ಜಲವ
ಮರುಳೆ ನೀ ಕೌಂತೇಯ ಮಾದ್ರೇ
ಯರನು ನೋಡುವುದಿತ್ತ ನನಗು
ತ್ತರವನಿತ್ತುದಕವನು ಕುಡಿಯೆಂದುದು ನಭೋವಚನ ೨೪

ಮೇಲೆಯಾರೈವನೆ ಸುತೃಪ್ಣಾ
ಲೋಲಚಿತ್ತನು ಕಾಮಿ ಮೃಗಯಾ
ಕೇಳಿ ಲಂಪಟನರ್ಥ ಲಾಭ ದ್ಯೂತಲೋಲುಪನು
ಕೇಳು ಜನಮೇಜಯ ತಟಾಕದ
ಕಾಳಕೂಟವ ಕುಡಿದನರ್ಜುನ
ಕಾಲಿಡುತ ಡೆಂಡಣಿಸಿ ವೈಮರೆದವರ ಕೂಡಿದನು ೨೫

ತಡೆದರತ್ತಲು ಮೂವರನುಜರು
ಮಡಿದರೇನೋ ಚಿತ್ರವಾಯಿತು
ನಡೆ ಸಮೀರಕುಮಾರ ನೀ ಹೋಗತ್ತ ತಳುವದಿರು
ತಡೆಯದೈತಹುದೆನೆ ಹಸಾದವ
ನುಡಿಯುನಾನುತ್ತೈದಿ ಹೆಜ್ಜೆಯ
ಹಿಡಿದು ಬಳಿ ಸಲಿಸಿದನು ಬರೆ ಬರೆ ಕಂಡನದ್ಭುತವ ೨೬

ದಟ್ಟುಗೆಡೆದಸುಂಗಳೆದ ತನ್ನೊಡ
ಹುಟ್ಟಿದರನೀಕ್ಷಿಸಿದನುಂಸುರಿನ
ಬಟ್ಟೆಯನು ನೋಡಿದನು ಮೂಗಿನ ಬಳಿಯ ಬೆರಳಿಟ್ಟು
ಮುಟ್ಟಿತಿವರಿಗೆ ಮರಣವಿನ್ನೇ
ನಟ್ಟಿ ಕೊಲುವೆನು ಜವನ ಮೃತ್ಯುವ
ನಿಟ್ಟೆಲುವನುಂದುರಿಸುವೆನೆನುತೊದರಿದನು ಕಲಿಭೀಮ ೨೭

ಮನ್ನಣೆಗೆ ಹಿರಿಯಯ್ಯನೆಂದಾ
ನಿನ್ನ ಬಗೆವೆನೆ ಜವನ ಗಂಟಲ
ಮುನ್ನ ತಿರುಹುವೆನೆನುತ ಕಿಡಿಕಿಡಿಯೋದನಾ ಭೀಮ
ಇನ್ನೊದರಿ ಫಲವೇನು ಕಡಿವೆನು
ಮುನ್ನ ಜಲವನು ಬಳಿಕ ನೋಡುವೆ
ನೆನ್ನವರ ಮಾರ್ಗವನೆನುತ ಮೊಗೆದನು ವಿಷೋದಕವ ೨೮

ಮಾಣು ಮಾಣುತ್ತರವ ಕೊಡು ಮುಂ
ಗಾಣಬೇಹುದು ತಂದೆ ತನಗೀ
ಕ್ಷೋಣಿಯಲಿ ಪೂರ್ವದ ಪರಿಗ್ರಹವೀ ಸರೋವರವು
ಜಾಣನಾದೊಡೆ ಜಾರಬಿಡು ಬಿಡು
ಕೇಣವನು ನೀನೆನಲು ಗಗನದ
ವಾಣಿಯನು ಮನ್ನಿಸದೆ ಮಾರುತಿಯೀಂಟಿದನು ಜಲವ ೨೯

ದಡದಡಿಸಿ ಕೊಳನಿಂದ ಹೊರಗಡಿ
ಯಿಡುತ ಬಳಲಿದನನಿಲ ಸುತನವ
ರೊಡನೆ ವೈಯಿಕ್ಕಿದನು ಕಳಚಿದ ನೀಲ ಗಿರಿಯಂತೆ
ಅಡಿಗೆಡೆದನಾ ಭೀಮನಿತ್ತಲು
ಕಡು ನಿರೋಧವ ಹಿಡಿದು ತಾನೇ
ನಡೆದು ಬಂದನು ಧರ್ಮಸುತನಾ ಕೊಳನ ಪಥವಿಡಿದು ೩೦

ಮೇಲೆ ಮಗುಳ್ದಾಲಿಗಳ ಚಾಚಿದ
ತೋಳ ಮೇಲಿನ ತಲೆಯ ಸುಯ್ಲಿನ
ಲೀಲೆಯುಡಗಿದ ಮುಖದ ಮಸುಳಿದ ಕಾಯಕಾಂತಿಗಳ
ಮೇಲು ಮುಸುಕಿನ ಮಗ್ಗುಲಿನಲಿಹ
ನಾಲುವರನೀಕ್ಷಿಸುತ ಭೂಪತಿ (ಚಿತ್ತದಲಿ
ಕೋಲು ಮರುಮೊನೆಗೊಂಡವೋಲ್ ಮರುಗಿದನು ೩೧

ಮುಸುಕನರೆದೆರೆದವರ ಮೊಗ
ದುಸುರುಗಳನಾಲಿಸಿದನಕಟಾ
ಶಿಶುಗಳಿಗೆ ಕಡು ಹಾನಿಯಾಯಿತೆ ಶಿವ ಮಹಾದೇವ
ನಿಶಿತಶಸ್ತ್ರದ ಗಾಯವಿಲ್ಲು
ಬ್ಬಸದ ಸಾವಿನ್ನಾವುದೋ ನಾ
ನಸುಗಳೆಯುವೆಕುಳಿದೆನೆಂದಳಲಿದನು ಯಮಸೂನು ೩೨

ಇಂದಿನಲಿ ಕಡೆಯಾಯ್ತಲಾ ವಿಮ
ಳೇಂದುವಂಶಕೆ ಕೌರವನ ಛಲ
ಸಂದುದಿನ್ನಹಿತಾವನೀಶರಿಗಾಯ್ತು ಪರಿತೋಷ
ಕೊಂದರಾರಕಟಕಟೆನುತ್ತರ
ವಿಂದನಾಭನ ಕೃಪೆಗೆ ಬಾಹಿರ
ನಿಂದು ತಾನಾದೆನೆ ಮಹಾದೇವೆಂದು ಬಿಸುಸುಯ್ದ ೩೩

ಹೋಗಲಿನ್ನೀ ನೀರುಗುಡಿದಿವ
ರಾಗು ಹೋಗರಸುವೆನೆನುತ ಥಗೆ
ತಾಗಿದವನಿಪನಿಳಿದು ಪೊಕ್ಕನು ವಿಷ ಸರೋವರವ
ಬಾಗಿ ಮೊಗೆದನು ಜಲವನಭ್ರದೊ
ಳಾಗಲಾದುದು ರಭಸವೆಲೆ ಸಕ
ಳಾಗಮಜ್ಞ ಮಹೀಶ ಕೇಳೆಂದುದು ನಭೋನಿನದ ೩೪

ಅನುಜರವಿವೇಕಿಗಳು ಪರಿಣತ
ಜನದಲಧಿಕನು ನೀ ನಿಧಾನಿಸಿ
ನನಗೆ ಮಾರುತ್ತರವನಿತ್ತು ನಿರಂತರಾಯದಲಿ
ತನುವಿಗಾಪ್ಯಾಯನವ ಮಾಡುವು
ದೆನಲು ಕೇಳಿದು ಥಗೆಯ ಸೈರಿಸಿ
ಘನ ಪಥದ ನುಡಿ ಯಾರದೆಂದವನೀಶನಾಲಿಸಿದ ೩೫

ಬಿಸುಟನುದಕವನಾ ನುಡಿಯನಾ
ಲಿಸಿದನಾರೈ ನೀನು ನಿನಗಾ
ಗಸದಲಿರವೇನಸುರನೋ ಕಿನ್ನರನೊ ನಿರ್ಜರನೊ
ಉಸುರೆನಲು ತಾ ಯಕ್ಷನೀ ಸಾ
ರಸವು ನನ್ನದು ನಿನ್ನ ತಮ್ಮದಿ
ರಸುವನೆಳೆದವ ನಾನು ಕೇಳೈ ಧರ್ಮಸುತಯೆಂದ ೩೬

ಬಾಲಕರು ನೀವೆನ್ನ ಮಾತನು
ಕೇಳಿ ಉದಕವ ಕುಡಿವುದೆನೆ ಭೂ
ಪಾಲ ನಿನ್ನವರೆನ್ನ ಮಾತನು ಕೇಳಿ ಮನ್ನಿಸದೆ
ಮೇಲುಗಾಣದೆ ನೀರು ಕುಡಿದು ವಿ
ತಾಳಿಸಿದರಿಂದೆನ್ನ ಮಾತನು
ಕೇಳಿ ನೀನುತ್ತರವ ರಚಿಸೆನೆ ನೃಪತಿ ಹೇಳಿಂದ ೩೭

ಜಲನಿಧಿಗೆ ಸರಿ ಸರಸಿ ಯಾವುದು
ನೆಲಕೆ ಹಿತವನದಾರು ಮರ್ತ್ಯ
ವಳಿಗೆ ಮಾತೆಯದಾರು ಸೂರ್ಯಪ್ರಭೆಗೆ ಸರಿಯೇನು
ತಿಳುಹು ಧರ್ಮಜ ಸಕಲ ಧರ್ಮಾ
ವಳಿಯ ಸಾರವನೆನಲು ಯಕ್ಷನ
ಬಲುಮೆಗವನೀಪಾಲನತಿ ಪರಿತೋಷದಲಿ ನುಡಿದ ೩೮

ಗಗನವಬುಧಿಗೆ ಸರಿ ಸರೋವರ
ಜಗಕೆ ಹಿತವನು ಶಕ್ರ ಮನುಜಾ
ದಿಗಳ ಮಾತಾರೂಪು ಗೋವುಗಳಿದು ನಿಧಾನ ಮತ
ಬಗೆಯಲಗ್ಗದ ಸತ್ಯವೆಂಬುದು
ಗಗನಮಣಿಗೆಣೆಯೆನಲು ಚಿತ್ತಕೆ
ಸೊಗಸಿ ತಲೆದೂಗಿದನು ಮಗುಳಿಂತೆಂದನಾ ಖಚರ ೩೯

ನಯವಿದನೆ ಕೇಳಾವನೈ ಕ್ಷ
ತ್ರಿಯನು ವಿಪ್ರರೊಳಾವನೈ ಶ್ರೋ
ತ್ರಿಯನು ಸುಜನರೊಳಾವನೈ ಮಹಾಪುರುಷನೆಂಬವನು
ನಿಯತ ಧೀಮನದಾರು ದೇವ
ಪ್ರಿಯನದಾವನು ಕಠಿಣ ಕಷ್ಟಾ
ಶ್ರಯನದಾವನು ಧರ್ಮಸುತ ಹೇಳೆಂದನಾ ಖಚರ ೪೦

ಧೃತಿಯುತ ಕ್ಷತ್ರಿಯನು ವೇದ
ಪ್ರತಿಯುತ ಶ್ರೋತ್ರಿಯನಹಿಂಸಾ
ರತನು ಮಹಪುರುಷನು ಸುಧೀಮನು ಸಾಧುಸೇವಕನು
ಸತತ ಪರರುಪಕಾರಿ ದೇವ
ಪ್ರತತಿ ಪ್ರೀಯನು ಪರರ ಗುಣದು
ನ್ನತಿಯ ಸೈರಿಸದವನು ಕಷ್ಟನು ಯಕ್ಷ ಕೇಳೆಂದ ೪೧

ನಿಂದ್ಯನಾವನು ಲೋಕದೊಳಗಭಿ
ವಂದ್ಯನಾವನು ಜೀವವಿರೆ ಮೃತ
ನೆಂದಡಾವನು ದೇಶ ಕಳೆವಹುದಾರ ದೆಸೆಯಿಂದ
ಸಂದ ಯಜ್ಞವದೆಂತು ಕೆಡುವುದು
ತಂದೆ ಹೇಳೈ ತನಗೆನಲು ಸಾ
ನಂದದಿಂದವೆ ಕಾಣಿಸಿದನಾ ಖಚರಗುತ್ತರವ ೪೨

ಕೇಳು ಪರನಿಂದಕನೆ ನಿಂದ್ಯನು
ಹೇಳಲೇಂ ಪರಹಿತನೆ ವಂದ್ಯನು
ಹೇಳಿದಿಚ್ಛೆಗೆ ನಡೆವ ನೃಪನಿಂದಳಿವುದಾ ದೇಶ
ಕೇಳು ನಡೆವೆಣನೇ ದರಿದ್ರನು
ಸಾಲದೆನಿಸಿದ ದಕ್ಷಿಣೆಯ ಯ
ಜ್ಞಾಳಿ ನಿಷ್ಫಲವೆಂದು ನುಡಿದನು ರಾಯಕೌಂತೇಯ ೪೩

ನರಕಿ ಯಾವನು ಸುಜನರಲಿ ಬಾ
ಹಿರನದಾವನು ಲೋಕವರಿಯಲು
ಹರಣವಿರೆ ಹೊಂದಿದನದಾವನು ಭೂಮಿಪಾಲರಲಿ
ಮರುಳದಾವನು ಮಾಸ ಭಂಗದಿ
ಭರಿತನಾವನು ಹೇಳು ಧರ್ಮಜ
ಸರಸಿಯಲಿ ಬಳಿಕುದಕವನು ಕುಡಿಯೆಂದನಾ ಖಚರ ೪೪

ಎನೆ ಕೃತಘ್ನನೆ ನರಕಿ ವಿದ್ಯಾ
ಧನ ಮದಾಂಧನೆ ಬಾಹಿರನು ಹೊ
ಕ್ಕನುವರವ ಹಿಂಗುವ ಮಹೀಪತಿ ಜೀವವಿರೆ ಮೃತನು
ವಿನುತ ಗುರುವರಿಯದನೆ ಮರುಳಂ
ಗನೆಯರಲಿ ವಿಶ್ವಾಸಪರನೇ
ಜನವರಿಯಲಭಿಮಾನ ಹೀನನು ಯಕ್ಷ ಕೇಳೆಂದ ೪೫

ನಲವು ನಿಲೆ ಫಲುಗುಣನು ಹೂಡಿದ
ಹಿಳುಕನೀಡಾಡಿದನು ಲೋಕದ
ಬಳಕೆ ಕೌತುಕವೆನುತ ತೂಗಿದನಮಳ ಮಕುಟವನು
ಒಲವರವಲಾ ಮುರಹರಂಗೀ
ಬಲದೊಳಗೆ ಸಾಹಸವ ಸುಡುಸು
ಡಲೆನುತ ದುಗುಡವ ಪಿಡಿದು ಫಲುಗುಣನಿಳುಹಿದನು ಧನುವ ೧೮

ಏನು ಫಲುಗುಣ ಧರ್ಮಜನ ಮದ
ದಾನೆ ದುಗುಡವಿದೇನು ಪೇಳೈ
ನೀನು ಧನುವನು ತೊರೆದ ಕಾರಣವೇನು ಪೊಸತೀಗ
ಏನು ಹದ ಹೇಳೆನಲು ಕೇಳೆಲೆ
ದಾನವಾಂತಕ ನುಡಿಯಲಾವುದು
ಹಾನಿಯೆಮಗಿಲ್ಲೆನುತ ಮೇಗರೆನುಡಿದನಾ ಪಾರ್ಥ ೧೯

ಹೇಳು ಹೇಳೆನ್ನಾಣೆ ಚಿತ್ತದೊ
ಳಾಳುವುದ ಮರೆಮಾಡದಿರು ನಿಜ
ಲೋಲ ಧರ್ಮಜನಾಣೆ ನಿನಗೆನೆ ಪಾರ್ಥ ನಸುನಗುತ
ಕಾಲಗುಣವೆಂದರಿಯೆ ಮೇಣ್ ತ
ನ್ನಾಳುತನ ಪುಸಿಯಾಯ್ತು ರಿಪುಭಟ
ನಾಳುತನ ದಿಟವಾಯ್ತು ಕೌತುಕವೆಂದನಾ ಪಾರ್ಥ ೨೦

ಒಂದು ಯೋಜನವರೆಗೆ ತಿರುಗಿತು
ಹಿಂದಕಹಿತನ ತೇರು ತಾನೆಸ
ಲೊಂದು ಬಿಲ್ಲಂತರಕೆ ತೊಲಗಿತು ನಮ್ಮ ರಥವಿಂದು
ಇಂದು ಕರ್ಣನ ಸಾಹಸಕೆ ಮನ
ಸಂದು ಪತಿಕರಿಸಿದಿರಿ ಕೌತುಕ
ವೆಂದು ಕಾಲವ ಬೈದೆನೆಂದನು ಪಾರ್ಥನಾ ಹರಿಗೆ ೨೧

ಆಳುತನದಲಿ ವೀರಕರ್ಣನ
ಹೋಲುವರ ನಾ ಕಾಣೆನೈ ಸುರ
ಪಾಲಕರು ತಾವಾನಬಹುದೇ ಕರ್ಣನುರವಣೆಯ
ಕೋಲು ಯೋಜನವರೆಗೆ ತೊಲಗಿಸಿ
ಚಾಳಿಸಿತ ನೀ ನುಡಿವೆ ನಿಜ ಬಿ
ಲ್ಲಾಳತನವನು ನಿನ್ನ ಮನದಲಿ ತಿಳಿದು ನೋಡೆಂದ ೨೨

ಬಸುರೊಳಗೆ ಬ್ರಹ್ಮಾಂಡಕೋಟಿಯ
ಮುಸುಕಿಕೊಂಡಿಹ ನಾ ಸಹಿತ ಮೇ
ಲೆಸೆವ ಸಿಂಧದ ಹನುಮಸಹಿತೀ ದಿವ್ಯಹಯಸಹಿತ
ಎಸುಗೆಯಲಿ ತೊಲಗಿಸುವ ಕರ್ಣನ
ಅಸಮಸಾಹಸ ಪಿರಿದೊ ಹಲುರಥ
ದೆಸುಗೆ ನಿನ್ನಗ್ಗಳಿಕೆ ಪಿರಿದೋ ಪಾರ್ಥ ಹೇಳೆಂದ ೨೩

ಎನಲು ತಳವೆಳಗಾಗಿ ಫಲುಗುಣ
ಧನುವ ಕೊಂಡನು ದನುಜವೈರಿಗೆ
ಮನದ ಗರ್ವವನುಸುರಲರಿಯದೆ ಬಾಗಿದನು ಶಿರವ
ಮೊನೆಯಲಗಿನಂಬಿನಲಿ ಕರ್ಣನ
ಧನುವನಿಕ್ಕಡಿಗಳೆದು ಫಲುಗುಣ
ನನವರತ ಬಹುಸತ್ವದಲಿ ಮತ್ಸರಿಸಿ ಕಾದಿದನು ೨೪

ಎಚ್ಚನೀತನ ಸಾರಥಿಯ ಮಗು
ಳೆಚ್ಚನೀತನ ರಥವ ವಾಜಿಯ
ನೆಚ್ಚನೀತನ ಧನುವನೀತನ ಸಿಂಧ ಸೀಗುರಿಯ
ಎಚ್ಚನೀತನ ನಿಶಿತಶಸ್ತ್ರವ
ಕೊಚ್ಚಿದನು ಮಗುಳೆಚ್ಚು ಪುನರಪಿ
ಯೆಚ್ಚು ಕರ್ಣನ ಹೊಳ್ಳುಗಳೆದನು ಪಾರ್ಥ ನಿಮಿಷದಲಿ ೨೫

ಬೊಬ್ಬಿರಿದುದಾ ಸೇನೆ ಸೋಲದ
ಮಬ್ಬು ಮುಸುಕಿದುದೀ ಬಲವನೀ
ಯುಬ್ಬೆಯನು ಸೈರಿಸುತ ಸಾಹಸಮಲ್ಲ ತನಿಗೆದರಿ
ಇಬ್ಬರಿಗೆ ಫಡ ಹಂಬ್ಬನಿಕ್ಕುವ
ಳೊಬ್ಬಳೇ ಜಯಲಕ್ಷ್ಮಿ ಬೊಡ್ಡಿಯ
ಕೊಬ್ಬ ನಿಲಿಸುವೆನೆನುತ ಖತಿಯಲಿ ಮಸಗಿದನು ಕರ್ಣ ೨೬

ಹನುಮನನು ಮತ್ತೊಮ್ಮೆ ಪುನರಪಿ
ದನುಜರಿಪುವನು ಮತ್ತೆ ಹಯವನು
ಧನುವನರ್ಜುನನಂಬುಗಳನಾ ಛತ್ರ ಚಾಮರವ
ಮೊನೆಗಣೆಯಲೇ ಮುಸುಕಿದನು ಮು
ಮ್ಮೊನೆಯ ಬೋಳೆಯ ತೊಡಚಿ ಕೌರವ
ಜನಪನಾವೆಡೆ ನೋಡಹೇಳೆನುತುಬ್ಬಿದನು ಕರ್ಣ ೨೭

ಮೊದಲಲಾ ಭೀಷ್ಮನ ಶರಾಘಾ
ತದಲಿ ನೊಂದೆನು ಬಳಿಕ ಕರ್ಣನ
ಕದನದಲಿ ತಪ್ಪಲ್ಲ ತಪ್ಪಲ್ಲೆನುತ ಮುರವೈರಿ
ಗದಗದಿಸುತಶ್ವವನು ಬೋಳೈ
ಸಿದನು ಹನುಮನ ನೋಡಿ ತಲೆದೂ
ಗಿದನು ಮಂದಸ್ಮಿತಮಧುರಮುಖಕಮಳನೊಲವಿನಲಿ ೨೮

ಶರಹತಿಯಲುರೆ ನೊಂದು ಧೂಪಿಸಿ
ತರಹರಿಸುವಶ್ವಾಳಿ ಕೃಷ್ಣನ
ಕರುಣವಚನಾಮೃತರಸದಿನಾಪ್ಯಾಯನಂಬಡೆದು
ಖುರದಲವನಿಯ ಪೊಯ್ದು ಲಳಿ ಮಿಗ
ಲುರವಣಿಸಿದವು ಹನುಮನಂತಃ
ಕರಣ ಹದುಳಿಸಿ ಹಿಗ್ಗಿದನು ನರನಾಥ ಕೇಳೆಂದ ೨೯

ಬಳಿಕ ಹೇಳುವುದೇನು ಪಾರ್ಥನ
ಮುಳಿಸಿನಲಿ ಕಾಲಾಗ್ನಿ ಜಿಹ್ವಾ
ವಳಿಯ ಲಳಿಯಲಿ ಕುಪಿತಕಾಳೋರಗನ ವದನದಲಿ
ಸುಳಿವವನ ಸಾಹಸವನಾತನ
ಬಲುಹನಾತನ ಜಯುವನಾತನ
ನಿಲವ ಕಂಡವರಾರು ಸುರ ನರ ನಾಗಲೋಕದಲಿ ೩೦

ರಾಯ ಕೇಳಭಿಮಂತ್ರಿಸಿದನಾ
ಗ್ನೇಯವನು ಹೂಡಿದನು ಸುರಕುಲ
ಬಾಯಬಿಡಲಂಬುಗಿದು ಹಾಯ್ದುದು ಬಲುದಿರುವನೊದೆದು
ವಾಯು ಪಡಿಬಲವಾಗೆ ಕಿಡಿಗಳ
ಬಾಯಿಧಾರೆಯ ಹೊದರ ಕಬ್ಬೊಗೆ
ಲಾಯದಲಿ ಲವಣಿಸುವ ದಳ್ಳುರಿದಿರುಳ ಚೂಣಿಯಲಿ ೩೧

ಅಹಹ ಬೆಂದುದು ಲೋಕವಿನ್ನಾ
ರಹಿಮಂಖವ ಚುಂಬಿಸುವರೋ ವಿ
ಗ್ರಹದ ಫಲನಿಗ್ರಹವಲಾ ಶಿವ ಎನುತ ಸುರರುಲಿಯೆ
ವಹಿಲ ಮಿಗೆ ವರುಣಾಸ್ತ್ರದಲಿ ಹುತ
ವಹನ ಬಿಂಕವ ಬಿಡಿಸಿದನು ಜಯ
ವಹುದೆ ಪರರಿಗೆ ಪಾರ್ಥನಿರೆ ಜನನಾಥ ಕೇಳೆಂದ ೩೨

ಸರಳ ಝಳ ಝಾಡಿಸಿತು ಕಬ್ಬೊಗೆ
ಪರೆದುದಲ್ಲಿಯದಲ್ಲಿ ತಂಪಿನ
ಸರಳವೊನೆಯಲಿ ಸಿಂಪಿಸುವ ತುಂತುರ ತುಷಾರದಲಿ
ಅರಿಬಲದ ಬೊಬ್ಬಾಟದಲಿ ಧರೆ
ಬಿರಿಯಲರ್ಜುನ ಹೂಡಿದನು ಹೂಂ
ಕರಣ ಮಾನಿತ ಮಂತ್ರಮಂಡಿತ ಮೇಘಮಾರ್ಗಣವ ೩೩

ಹೊಗೆಯ ಹೊರಳಿಯ ವಿವಿಧವರ್ಣದ
ಮುಗಿಲ ಪಾಳೆಯವೆತ್ತಿ ಬಿಟ್ಟುದು
ಗಗನದಗಲದಲೌಕಿದವು ದೆಸೆದೆಸೆಯ ಮೂಲೆಗಳ
ಹಗಲುಗತ್ತಲೆ ಕಟ್ಟಿತೇನಿದು
ಯುಂಗದ ಕಡೆಯೋ ಶಿವಶಿವಾ ಎನೆ
ಜಗಜಗತ್ಪ್ರಾಣಾಸ್ತ್ರವನು ಹೂಡಿದನು ಕಲಿಕರ್ಣ ೩೪

ಅಟ್ಟಿ ಹೊಯ್ದುದು ನಿರಿಮುಗಿಲನರೆ
ಯಟ್ಟಿ ಕೊಡಹಿತು ತಳಿತಮೇಘದ
ಥಟ್ಟು ಮುರಿದುದು ಬೀಸಿದವು ಬಿರುಗಾಳಿ ಬಲ ಬೆದರೆ
ಇಟ್ಟಣಿಸಿ ಕೈಯೊಡನೆ ಕೊಂಡನು
ಬೆಟ್ಟವುರುಳುವ ಬಾಣವನು ಜಗ
ಜಟ್ಟಿ ಕೌರವರಾಯ ಬಾಳೆನುತೆಚ್ಚನಾ ಕರ್ಣ ೩೫

ಗಿರಿಯ ಡೆಂಕಣಿಜಂತ್ರವನು ತರ
ಹರಿಸುವವರಾರರಸ ಧಾವಣಿ
ಗಿರಿಯ ಧಾಳಿಗೆ ಧಾತುಗೆಟ್ಟುದು ಪಾಂಡುಸುತಸೇನೆ
ಅರರೆ ಕೆಡೆಕೆಡೆಯೆನುತ ವಜ್ರದ
ಸರಳನುಗಿದನದಾವ ವಹಿಲದೊ
ಳುರುಳಿಗೆಡಿದನು ಪರ್ವತಾಸ್ತ್ರವನಿಂದ್ರಸುತ ನಗುತ ೩೬

ಆವ ಚಳಕದೊಳರ್ಜುನನು ತಿಮಿ
ರಾವಲಂಬದ ಸರಳಲೆಚ್ಚನು
ನಾವರಿಯೆವಿರುಳಂಧತಮ ಮುದ್ರಿಸಿತು ದೃಷ್ಟಿಗಳ
ಆವನಾವನನರಿವನೋ ತಾ
ನಾವನಿದಿರಾರೆಂಬ ಭೇದವ
ತಾವು ತೋರದು ತಮದೊಳದ್ದುದು ಕೂಡೆ ಕುರುಸೇನೆ ೩೭

ವೈರಿಶರಕೇನರಿಯನೇ ಪ್ರತಿ
ಕಾರವನು ನಿನ್ನಾತನಗ್ಗದ
ಸೌರಮಯ ಮಂತ್ರಾಭಿಮಂತ್ರಿತ ಭಾನುಮಾರ್ಗಣವ
ಆರು ಕಂಡರು ತಿಮಿರಜನಿತ ವಿ
ಕಾರವನು ಹೇಳಿಗೆಯ ಮುಚ್ಚುಳ
ಜಾರಿಸಿದ ಫಣಿಯಂತೆ ಭುಲ್ಲವಿಸಿತ್ತು ಕುರುಸೇನೆ ೩೮

ಆಗಳೇ ತೆಗೆದುರಗಬಾಣವ
ತೂಗಿಬಿಟ್ಟನು ನಿನ್ನ ಕರ್ಣನ
ಲಾಗುವೇಗವನೇನನೆಂಬೆನು ಚಾಪತಂತ್ರದಲಿ
ಸೀಗುರಿಸುವುರಿವಿಷದ ಲೋಳೆಯು
ಲಾಗಿಸುವ ನಾಲಗೆಯ ಸುಯ್ಲಿನ
ಬೇಗುದಿಯ ತೊಡಬೆಗಳ ಹಾವ್ ತುಡುಕಿದವು ಥಟ್ಟಿನಲಿ ೩೯

ಎಲೆಲೆ ಹಾವೋ ಹಾವು ಕೆಂಡದ
ಮಳೆಯ ತಡೆವವೆ ಕೊಡೆಯೆನುತ ಕಳ
ವಳಿಸಿತಲ್ಲಿಯದಲ್ಲಿ ಹರೆದುದು ಹುದುಗಿ ಹೊದರೊಡೆದು
ಬಲುವಿಷದ ಕಿರುವನಿಯ ಹಾವಿನ
ಮಳೆಗೆ ಗರುಡಾಸ್ತ್ರದಲಿ ತನ್ನಯ
ದಳಕೆ ಹಿಡಿದನು ಕೊಡೆಯನರೆಘಳಿಗೆಯಲಿ ಕಲಿಪಾರ್ಥ ೪೦

ಏಸು ಹಾವುದುರಿದವು ರಣದೊಳ
ಗೈಸು ಹದ್ದೆರಗಿದವು ತುಂಡಿಸಿ
ಬೀಸಿ ಬಿಸುಟವು ಕಡಿಗಳನು ಕೌರವನ ಥಟ್ಟಿನಲಿ
ಏಸು ಪರಿಯಲಿ ನರನ ಬಿನ್ನಣ
ವೈಸುಪರಿ ಕರ್ಣನಲಿ ಕರ್ಣನ
ಕೌಶಲವದೆನಿತನಿತು ಪರಿಯನು ಕಂಡೆನಾತನಲಿ ೪೧

ಬಲುಹು ಭೀಷ್ಮದ್ರೋಣರಿಂದ
ಗ್ಗಳವಲಾ ಕರ್ಣಂಗೆನುತ ಪಡಿ
ಬಲಕೆ ಬಂದರು ಭೀಮ ಸಾತ್ಯಕಿ ನಕುಲ ಸಹದೇವ
ದಳದೊಳದಟುಳ್ಳವರು ಪಾರ್ಥನ
ಕೆಲಬಲದಲುರವಣಿಸಿದರು ವೆ
ಗ್ಗಳೆಯನೈ ನಿನ್ನಾತನಿಂದಿನಲೆರಡು ಥಟ್ಟಿನಲಿ ೪೨

ಎಲೆ ಧನಂಜಯ ಸಾಲದೇ ಹೆ
ಬ್ಬುಲಿಯ ಕಾಲಾಟದಲಿ ಮೃಗಶಿಶು
ಮಲೆತಡೇನಗ್ಗಳಿಯನೇ ಮೂಲೋಕವರಿವುದಲೇ
ಅಳವಿಗೊಡದಿರು ಸೂತತನಯನ
ತಲೆಯ ಬೆಸುಗೆಯ ಬಿಡಿಸುವಂಬಿನ
ಹಿಳುಕನುಗಿಯಾ ಹೊಳ್ಳುಗಣೆಯೇಕೆಂದನಾ ಭೀಮ ೪೩

ಪುಸಿಯೆ ಭೀಮನ ಮಾತು ಹೂಸಂಕ
ದೆಸುಂಗೆ ತಾನೇಕಿನ್ನು ರಿಪು ನಿ
ಪ್ಪಸರದಲಿ ಕಲಿಯೇರಿದರೆ ಕೈಕೊಳ್ಳನೀಶ್ವರನ
ಹುಸಿಕಣೆಯುಲೇನಹುದು ತೆಗೆ ಹರ
ವಿಶಿಖವನು ತೊಡು ಬೇಗಮಾಡೆಂ
ದಸುರರಿಪುವರ್ಜುನನ ಜರೆದನು ಭೂಪ ಕೇಳೆಂದ ೪೪

ಕ್ರೋಧಶಿಖಿ ಭುಲ್ಲವಿಸೆ ಮುಳಿದು ವಿ
ರೋಧಿಯನು ನೋಡಿದನು ಮುಳಂಗಲಿ
ರಾಧೆ ಕಂಬನಿಗಳಲಿ ಕುದಿಯಲಿ ಪುತ್ರಶೋಕದಲಿ
ಆಧಿ ತೀರಲಿ ನಮ್ಮ ಸೇನಾ
ವ್ಯಾಧಿಗಿದೆ ಮದ್ದೆನುತ ಪರಬಲ
ಸಾಧಕನು ಬ್ರಹ್ಮಾಸ್ತ್ರವನು ತೊಟ್ಟೆಚ್ಚನಾ ಪಾರ್ಥ ೪೫

ಶಿವಶಿವಾ ಬ್ರಹ್ಮಾಸ್ತ್ರವಿದಲಾ
ಭುವನಜನ ಸಂಹಾರಶರ ಸಂ
ಭವಿಸಿತೋ ಹಾ ಎನುತ ಹರೆದುದು ಮೇಲೆ ದಿವಿಜಗಣ
ತವಕದಲಿ ತತ್ಪ್ರತಿ ಮಹಾಸ್ತ್ರವ
ಜವಳಿವೆರಳಿಂದುಗಿದು ಬಿಡೆ ತಿವಿ
ತಿಹಿದು ತಮ್ಮೊಳಗಡಗಿದವು ದಿವ್ಯಾಸ್ತ್ರವಧ್ವದಲಿ ೪೭

ಆ ಮಹಾಸ್ತ್ರದ ಹಾನಿ ರೋಷದ
ತಾಮಸಾಗ್ನಿಯನೂದಿ ಬಿಡಲು
ದ್ದಾಮನರ್ಜುನ ಕೊಂಡನಗ್ಗದ ಜಾತಮನ್ಯುವನು
ಆ ಮಹಾಬಾಣಾಭಿಮುಖದಲಿ
ಸೋಮಧರ ಮಾರ್ಗಣವನಿಂತೀ
ಭೀಮವಿಕ್ರಮ ಕರ್ಣನೆಚ್ಚನು ರಾಯ ಕೇಳೆಂದ ೪೮

ಆತನಲಿ ಕೌಬೇರಮಾರ್ಗಣ
ವೀತನಲಿ ವಾಯವ್ಯಶರ ಬಳಿ
ಕಾತನಲಿ ನೈರುತ್ಯವಿತ್ತಲು ಸೋಮವರ್ತಿಶರ
ಆತನಲಿ ಸಾಮುದ್ರ ರೋಷಣ
ವೀತನಲಿ ವಡಬಾಸ್ತ್ರವಿಂತಿರ
ಲಾತನೀತನ ಸಮರ ಸರಿ ನರನಾಥ ಕೇಳೆಂದ ೪೯

ಇಪ್ಪತ್ತನಾಲ್ಕನೆಯ ಸಂಧಿ

ಸೂ. ರಾಯಸಾಹಸಮಲ್ಲ ವೆಗ್ಗಳ
ರಾಯ ಸುಭಟಶಿರೋರತುನ ರಾ
ಧೇಯಪಾರ್ಥರ ವಿಷಮ ರಣ ರಂಜಿಸಿತು ಮೂಜಗವ

ರಾಯ ಕೇಳೈ ಮತ್ತೆ ಕರ್ಣ ರ
ಸಾಯನವ ಕಟ್ಟಾಳು ರಣದಲಿ
ಸಾಯಲಾಗದೆ ಶಿವಶಿವಾ ಸಾಯರೆ ಸುರಾಸುರರು
ಬಾಯಬಿಡೆ ಪರಸೇನೆ ಭೀತಿಯ
ಲಾಯದಲಿ ಕಟ್ಟಿದನು ಪಾರ್ಥನ
ವಾಯುಜನ ಕರಣೇಂದ್ರಿಯಾಶ್ವಂಗಳನು ಕಲಿಕರ್ಣ ೧

ಎಲೆ ಮುರಾಂತಕ ಸಾಕು ರಥದಿಂ
ದಿಳಿ ಸುದರ್ಶನವೆಲ್ಲಿ ಚಾಪವ
ಕಳೆದುಕೊಳು ಕೌಮೋದಕಿಯ ಹಿಡಿ ಹಾಯ್ಕು ವಾಘೆಯವ
ಉಳುಹುವವರಾವಲ್ಲ ಕೊಳ್ಳೆನು
ತಳವಿಯಲಿ ಕೈಕೊಂಡು ಕೃಷ್ಣನ
ನಳುಕದೆಚ್ಚನು ನೂರು ಶರದಲಿ ಕರ್ಣ ಬೊಬ್ಬಿರಿದು ೨

ಜೋಡಿನಲಿ ಸೀಸಕದ ಮೇಲ
ಕ್ಕಾಡಿದವು ಕವಲಂಬು ಕವಚವ
ತೋಡಿ ನಟ್ಟವು ನೂಕಿದವು ನಾರಾಚ ಗರಿಸಹಿತ
ನೋಡಲೀ ವ್ಯಥೆಯುಂಟೆ ಭುವನದ
ಗೂಡು ಕೃಷ್ಣನ ದೇಹವಿದು ನಾ
ಡಾಡಿಗಳ ನಾಟಕವಲ್ಲೈ ನರನಾಥ ಕೇಳೆಂದ ೩

ಏನ ಹೇಳುವೆ ಹೂಡಿದಾ ಸಂ
ಧಾನವನು ರಥಹಯದ ವಾಘೆಯ
ಜೀನಗೆಲಸದ ಹಕ್ಕರಿಕೆಗಳ ನೊಗನ ಜೊತ್ತಗೆಯ
ಭಾನುಸುತ ಮುರಿಯೆಚ್ಚು ನಿನಗಿ
ನ್ನೇನು ಹದನೈ ಹನುಮ ಲಂಕೆಯ
ದಾನವರು ನಾವಲ್ಲೆನುತ ಕೈಮಾಡಿ ಬೊಬ್ಬಿರಿದ ೪

ಸೈರಿಸರ್ಜುನ ಶಿವನೊಡನೆ ನೀ
ಹೋರಿದಾತನು ನಿನ್ನ ಕೊಲುವಡೆ
ತೀರದೇ ತಪ್ಪೇನು ತಳುವಿತು ಪೇಳಲೇಕೆನುತ
ಕೂರಲಗಿನಂಬುಗಳ ಹಿಳುಕಿನ
ಸಾರದಲಿ ಮುದ್ರಿಸಿದನುದಯದ
ಲಾರನಿದಿರಲಿ ಕಂಡನೋ ಕಡುನೊಂದನಾ ಪಾರ್ಥ ೫

ಹರಿದುದಿಮ್ಮೈಜೋಡು ನೆತ್ತರಿ
ನೊರತೆ ನೂಕಿತು ಭದ್ರಪೀಠದ
ಹೊರಗು ನನೆದುದು ರ್ಘೂರ್ಮ್ಮಿನಲಿ ಜೋಲಿದನು ಮಲಗಿನಲಿ
ಉರುಕುಗೊಂಡುದು ಕರಣಚಯವರೆ
ದೆರೆದ ಕಂಗಳು ರೋಮಕಂಪದೊ
ಳರಿದುದಿಲ್ಲರೆಘಳಿಗೆ ಕೋಳಾಹಳವನಾ ಪಾರ್ಥ ೬

ಮತ್ತೆ ಕೇಳವನೀಶ ಭೀಮನ
ನೆತ್ತಿ ಬಿಸುಟವು ಬಾಣ ನಕುಲನ
ಕುತ್ತಿದವು ಸಹದೇವನೊಡಲಲಿ ಮಾಡಿದವು ಪಥವ
ಇತ್ತ ಸಾತ್ಯಕಿ ಚೇಕಿತಾನಕ
ನುತ್ತಮೌಂಜ ಶಿಖಂಡಿ ದಳಪತಿ
ಕೆತ್ತಿದೊಡಲಿನ ಜೋರಿನಲಿ ಹೊರಳಿದರು ಹುಡಿ ನನೆಯೆ ೭

ಒಸಗೆಯಾದುದು ನೆಲನ ದಿಕ್ಕಿನ
ಬೆಸುಗೆ ಬಿಡೆ ನಿಸ್ಸಾಳತತಿ ಗ
ರ್ಜಿಸಿದವುಬ್ಬಿದ ಬೊಬ್ಬೆ ಬಿಡಿಸಿತು ಧ್ರುವನ ಮಂಡಲವ
ಅಸಮಭುಜಬಲ ಪೂತುರೇ ಸಾ
ಹಸಿಕೆ ಮಝರೇ ಭಾಪು ಧಣುಧಣು
ವಿಷಮರಣ ನರಸಿಂಹ ಜಾಗೆಂದುದು ಭಟಸ್ತೋಮ ೮

ಜನಪ ಕೇಳೈ ಮತ್ತೆ ಸುತಸೋ
ಮನ ಶತಾನೀಕಾದಿ ರಿಪುನಂ
ದನರನೈವರನೆಚ್ಚು ಬೆರಸಿದನವರ ಸೀಮೆಯಲಿ
ಅನಿಲಜನ ಮರಳೆಚ್ಚು ಪಾಂಚಾ
ಳನ ವಿಭಾಡಿಸಿ ಥಟ್ಟಿನೊಳಂ ಮಂ
ಮ್ಮೊನೆಯ ಬೋಳೆಯ ಸರಿಯ ಸುರಿದುದು ಕರ್ಣ ನವಮೇಘ ೯

ಸಾಲ ಝಲ್ಲರಿಗಳ ಪತಾಕಾ
ಜಾಲವನು ಚಾಮರವ ಗೋವಳಿ
ಗೋಲ ಡೊಂಕಣಿಯೊಡ್ಡನೆತ್ತಿದ ಸಿಂಧ ಸೀಗುರಿಯ
ಧೂಳಿಪಟಮಾಡಿದನು ಮಿಡುಕು
ಳ್ಳಾಳಕೊಂದನು ಗಜರಥಾಶ್ವದ
ಮಾಲೆಯನು ಮುತ್ತಿದುದು ಕರ್ಣನ ಶಿಳಿಮುಖವ್ರಾತ ೧೦

ಅರಸ ಕೇಳಾ ನರನನಾ ವಾ
ನರನನಾ ಮುರಹರನನಾ ರಥ
ತುರಗನಿಚಯವನಾ ರಥವನಾ ಶರವನಾ ಧನುವ
ಹುರುಳುಗೆಡಿಸಿದು ಭುಜಪರಾಕ್ರಮ
ದುರಿಯೊಳಗೆ ಬಿಡೆಕಾಸಿ ಹಗೆನೆ
ತ್ತರಲಿ ನೀರೂಡಿದನು ನಿಜಶರನಿಕರವನು ಕರ್ಣ ೧೧

ಹೇಳಲರಿಯೆನು ವಿಕ್ರಮಾಗ್ನಿ ಛ
ಡಾಳಿಸಿದುದಡಿಗಡಿಗೆ ಸೇನಾ
ಜಾಳವನು ಬೇಳಿದನು ಕೂರಂಬುಗಳ ಕೊಂಡದಲಿ
ಆಲಿಗಳು ಸವಿನೋಡಲಿಂದಿನ
ಕಾಳೆಗವ ಬರಹೇಳು ಕುರುಭೂ
ಪಾಲಕನ ಬರಹೇಳು ಬರಹೇಳೆನುತ ಬೊಬ್ಬಿರಿದ ೧೨

ಶರಹತಿಗೆ ಮುಖದಿರುಹಿ ಕಾಲಾಳ್
ತುರಗಸೇನೆಯ ಮರೆಯ ಸಾರಿತು
ತುರಗದಳ ಬಗಿದಂಡಿಂಗೊಂಡುದು ಗಜಘಟಾವಳಿಯ
ಕರಿಘಟಾವಳಿ ಕೋಲಿನುರುಬೆಗೆ
ತೆರಳಿದವು ತೇರುಗಳ ಮರೆಯಲಿ
ಹೊರಳಿಯೊಡೆದುದು ತೇರ ಥಟ್ಟು ನಿಹಾರದೆಸುಗೆಯಲಿ ೧೩

ಕೋಲ ಕೋಳಾಹಳಕೆ ತೇರಿನ
ಗಾಲಿಗಳನೊಡ್ಡಿದರು ಹರಿಗೆಯ
ಹೇಳಿದರು ಹಮ್ಮುಗೆಯ ಕೊಯ್ದೊಡ್ಡಿದರು ರೆಂಚೆಗಳ
ಮೇಳೆಯುವ ಮೋಹಿದರು ಕಂಬುಗೆ
ನೂಲು ಹರಿಗೆ ತನುತ್ರ ಸೀಸಕ
ಜಾಲ ಗುಳ ಹಕ್ಕರಿಕೆ ಹಲ್ಲಣ ಬಾಹುರಕ್ಷೆಗಳ ೧೪

ಉರಿಯ ಮಳೆಗಾಲದಲಿ ದಡ್ಡಿಯ
ನರಗಿನಲಿ ಮಾಡಿದರೊ ಗಡ ಕಾ
ರಿರುಳ ಕೋಟೆಯ ರಚಿಸಿದರು ಗಡ ರವಿಯ ಮುತ್ತಿಗೆಗೆ
ಹರಿಗೆ ಸೀಸಕ ಜೋಡು ಕಾವವೆ
ಕೆರಳಿದಡೆ ಕರ್ಣಾಸ್ತ್ರವನು ನಿ
ಬ್ಬರದ ರಣದುಬ್ಬಟೆಯ ಕಂಡುಬ್ಬಿದನು ಕುರುರಾಯ ೧೫

ನೋಡಿರೈ ನಿಮ್ಮವರ ದಳ ಕೈ
ಮಾಡುತದೆ ನಮ್ಮಾತನನು ನೀವ್
ಬೋಡಿಗಾಬಿರಿ ನಿಮ್ಮ ಫಲುಗುಣ ಭೀಮರುಬ್ಬಟೆಯ
ನೋಡಿರೈ ಲೇಸಾಗಿ ನೀವ್ ಮಾ
ತಾಡಲಾಗದೆ ನಿಮ್ಮ ನಾಲಗೆ
ಗೂಡುಗೊಂಡವೆಯೆಂದನವನಿಪ ಕೃಪನ ಗುರುಸುತನ ೧೬

ನರನ ಬಿಗಿದುದು ಮೂರ್ಛೆ ಭೀಮನ
ಹರಣ ಕೊರಳಲಿ ಮಿಡುಕುತದೆ ಮುರ
ಹರನುಸುರವೈಹಾಳಿಯದೆ ಮೂಗಿನಲಿ ಮೋಹರಿಸಿ
ಬಿರುದ ಸಾತ್ಯಕಿ ನಕುಲ ಸಹದೇ
ವರಿಗದಾವದು ಹದನು ನಾವಿ
ನ್ನರಿಯೆವೈ ನೀವ್ ನೋಡಿಯೆಂದನು ನಗುತ ಕುರುರಾಯ ೧೭

ನೋಡಿ ಮಕ್ಕಳನಿಕ್ಕಿ ತಂದೆಗ
ಳೋಡುತದೆ ಸರಳಿಂಗೆ ತಮ್ಮನ
ನೀಡಿ ತೋರಿಸಿ ಜಾರುತದೆಯಣ್ಣಂದಿರಾದವರು
ಓಡುತದೆ ಆಳೊಡೆಯನನು ಬೀ
ಸಾಡಿ ತಾಯಿಗೆ ಮಕ್ಕಳಾಗದೆ
ಕೂಡೆ ಮಮ್ಮಳಿ ಮಸಗುತದೆ ಗುರುತನುಜ ನೋಡೆಂದ ೧೮

ಅರಿಬಲದ ಕಡುಗೇಡು ಹಬ್ಬಿತು
ಸುರಬಲದೊಳಕಟಕಟ ನೋಡೈ
ಸುರಪತಿಗೆ ದುಮ್ಮಾನವಡಸಿತಲಾ ಮಹಾದೇವ
ಸುರನದೀಜದ್ರೋಣರೀ ಪರಿ
ಪರವ ಶೌರ್ಯದಲೊದಗಿದರೆ ನಿ
ಷ್ಠುರದ ನುಡಿಯೆನ್ನದಿರಿ ಕಂಡುದನಾಡಬೇಕೆಂದ ೧೯

ಉಂಟು ಜೀಯ ವಿರೋಧಿಬಲವತಿ
ಕಂಟಣಿಸುತದೆ ಪಾಂಡುತನಯರ
ನಂಟರಿಷ್ಟರಿಗಾದುದೈ ದುಮ್ಮಾನ ಪುಸಿಯೇಕೆ
ಎಂಟುಮಡಿ ನಿಮಗಾದ ಜಯ ಹದಿ
ನೆಂಟುಮಡಿಯಾಚೆಯಲಿ ಸೇರುವು
ದೆಂಟು ಪುಸಿದರೆ ಕೊಯ್ಸಿಕೊಟ್ಟೆವು ನಮ್ಮ ನಾಲಗೆಯ ೨೦

ಮುಗುಳುನಗೆಯೊಬ್ಬರಲಿ ಸವಿವಾ
ತುಗಳ ರಸವೊಬ್ಬರಲಿ ಕಡೆಗ
ಣ್ಣುಗಳ ಮಿಂಚೊಬ್ಬರಲಿ ನೇವುರದೆಳೆಮೊಳಗು ಸಹಿತ
ಸೊಗಸು ಬೇರೊಬ್ಬರಲಿ ನೇಹದ
ತಗಹು ಬೇರೊಬ್ಬರಲಿ ಸತಿಯರ
ವಿಗಡತನವಿದು ಸಹಜ ಜಯವಧು ಜಾರೆ ನೋಡೆಂದ ೨೧

ಒಂದು ಕಡೆಗಣ್ಣಿನಲಿ ಕೌರವ
ವೃಂದವನು ನೋಡುವಳು ಕಯ್ಯೊಡ
ನೊಂದು ಕಡೆಗಣ್ಣಿನಲಿ ಮಾತಾಡಿಸುವಳರಿಬಲವ
ಇಂದು ಜಯವಧು ದೃಢಪತಿವ್ರತೆ
ಯೆಂದು ಬಗೆದೈ ಭೂಪ ಹುಸಿ ಹೋ
ಗೆಂದು ಗುರುಸುತ ನಗುತ ಹೋದನು ತನ್ನ ಮೋಹರಕೆ ೨೨

ಅರಸ ಚಿತ್ತೈಸಿತ್ತಲರ್ಜುನ
ನರೆಮುಗಿದ ಕಣ್ಣಾರಳ್ದವಂತಃ
ಕರಣ ಪಂಚೇಂದ್ರಿಯಕೆ ಬಿಟ್ಟುದು ತಗಹು ಕಳಕಳವ
ಮುರಿದು ಮುರಿದೆಡಬಲದ ತನ್ನವ
ರಿರವನೀಕ್ಷಿಸಿ ಕೋಪಶಿಖಿಯು
ಬ್ಬರದಲಿಬ್ಬಗಿಯಾದುದಂತರ್ಭಾವವಡಿಗಡಿಗೆ ೨೩

ಕಳಶಜಲದಲಿ ಮೆಯ್ಯ ನೆತ್ತರ
ತೊಳೆದು ಪೊಸಮಡಿವರ್ಗದಲಿ ಮುರಿ
ಮುಲಕ ಜಿಗಿದನು ಧರಿಸಿ ಸಾದುಜವಾಜಿ ಕಸ್ತುರಿಯ
ಲುಳಿಯ ಹೊಸ ಸೀಸಕದ ಕವಚವ
ನಳವಡಿಸಿ ಕರ್ಪುರದ ಕವಳದ
ಹಳುಕ ಹಾಯಿಕಿಕೊಳುತ ಕೊಂಡನು ಮತ್ತೆ ಗಾಂಡಿವವ ೨೪

ನಿಮ್ಮ ಸಿರಿಯೊಡಲಿನಲಿ ಜೋಡಿನ
ಹಮ್ಮುಗೆಯನುಡಿದಂಬು ಹಾಯ್ದವು
ನಮ್ಮ ದುಷ್ಕೃತವೈಸಲೇ ನಿಮಗೆತ್ತಲೀ ವ್ಯಸನ
ನಿಮ್ಮಡಿಗಳೇ ಬಲ್ಲಿರಿಂತಿರ
ಲೆಮ್ಮ ರಾಜ್ಯದ ಹುದುವೆ ನೊಂದನು
ನಿಮ್ಮ ಹನುಮನ ನೋಡಿಯೆಂದನು ಹರಿಗೆ ಕಲಿಪಾರ್ಥ ೨೫

ಸಾಕದಂತಿರಲಾಹವಕೆ ಬರ
ಲೇಕೆ ಕಬ್ಬಿನ ಬನವೆ ಬಾಣಾ
ನೀಕಕಭಿಮುಖವಾಗೆ ಸಾವರು ನೋವರಿದಕೇನು
ಈ ಕುಠಾರನನೀಕ್ಷಣಕೆ ಕೈ
ತೂಕದಲಿ ಕಾದದೆ ವಿವೇಕದೊ
ಳಾಕರಿಸು ಜಯವಧುವನೆಂದನು ಕೃಷ್ಣನರ್ಜುನನ ೨೬

ಹರಿಸು ರಥವನು ವೈರಿಯುರುಬೆಗೆ
ತೆರಳುತದೆ ನಮ್ಮವರು ಕರ್ಣನ
ಕೊರಳ ಬಾರಲಿ ನಿಲುಕಿಸುವೆನೀ ಶರಸಲಾಕೆಗಳ
ಅರಸ ಕೇಳೈ ಮಾತು ಹಿಂಚಿತು
ನರನ ರಥ ಜೋಡಿಸಿತು ಕರ್ಣನ
ಸರಿಸದಲಿ ಜೀವಿಸಿತು ಪಾಂಡವಸೇನೆ ನಿಮಿಷದಲಿ ೨೭

ಎಲೆಲೆ ಕರ್ಣ ಕಿರೀಟಿಯುರುಬೆಗೆ
ನಿಲುವುದರಿದೈ ಹಾವನರೆಗಡಿ
ದುಳುಹಿ ಕೆಡಿಸಿದೆ ಪಾಪಿ ರಾಯನ ರಾಜಕಾರಿಯವ
ತೊಲಗಿಸುವೆನೀ ರಥವನೆನೆ ಹೆ
ಕ್ಕಳಿಸಿ ಜರೆದನು ಕರ್ಣ ಶಲ್ಯನ
ನೆಲವೊ ಘಡ ನೋಡೆನುತ ತೆಗೆದೆಚ್ಚನು ಧನಂಜಯನ ೨೮

ಎಡೆಯಲೀತನ ಸರಳ ಸಾರವ
ಕಡಿದು ಕಯ್ಯೊಡನೆಚ್ಚು ಮಗುಳೆ
ಚ್ಚಡಿಗಡಿಗೆ ಬಿಡದೆಚ್ಚು ಪುನರಪಿ ಮತ್ತೆ ಮಗುಳೆಚ್ಚು
ಪಡಿಬಲಕೆ ರೋಷಾಗ್ನಿಯದನಿ
ಮ್ಮಡಿಸಿ ಬೀಸುವ ಖೇದಪವನನು
ಸುಡದೆ ಬಿಡುವನೆ ಕಲಿಧನಂಜಯನಹಿತ ತೃಣವನವ ೨೯

ಒದೆದು ಕವಚವನೊಡೆದು ಗರಿದೋ
ರಿದವು ವಕ್ಷದ ಮೇಲೆ ಮೊನೆಮೂ
ಡಿದವು ಬೆನ್ನಲಿ ಕರ್ಣ ನನೆದನು ರುಧಿರಧಾರೆಯಲಿ
ಉದುರಿದವು ಕಯ್ಯಂಬು ಬಲುಕಾ
ರಿದನು ರಕುತವ ಕಳವಳದ ಕಂ
ಪದಲಿ ರೆಠೊಂಪಿಸಿ ಮಲಗಿದನು ಮಣಿಮಯದ ಗದ್ದುಗೆಯ ೩೦

ತೋರಿಸಾ ನಿನ್ನೊಡೆಯನೋಲೆಯ
ಕಾರತನವನು ನಮ್ಮ ಬಲವನು
ಮೂರು ಮೂಲೆಯ ಹೊಗಿಸಿ ಬೆಚ್ಚನೆ ಬೆರೆತ ಗರುವನಲೆ
ಜಾರಿದವೆ ಕಯ್ಯಂಬು ಬಲು ರಣ
ವೀರಸಿರಿ ಹಾರಿದುದೆ ಶೌರ್ಯದ
ಮೋರೆಗೇಕೈ ಮರುಕವೆಂದನು ನಗುತ ಕಲಿಪಾರ್ಥ ೩೧

ಮರಳಿ ಶಲ್ಯನನೆಚ್ಚನಾತನ
ಕರದ ವಾಘೆಯ ಕಡಿದನಾ ರಥ
ತುರಗದೊಡಲಲಿ ಹೂಳಿದನು ಹೇರಾಳದಂಬುಗಳ
ಹೊರೆಯ ಹಡಪಿಗ ಚಾಹಿಯರ ಚಾ
ಮರಿಯರನು ನೋಯಿಸಿದ ಗೆಲವಿನ
ಗರುವತನವನು ಬಡ್ಡಿಸಹಿತಂಗುಳಿಚಿದನಾ ಪಾರ್ಥ ೩೨

ದಳಪತಿಯ ದುಮ್ಮಾನದಲಿ ಕಳ
ವಳಿಸಿತೀಚೆಯ ಥಟ್ಟು ಪಾರ್ಥನ
ಹಿಳುಕು ಹೊಕ್ಕವು ಹರಹಿ ತಿವಿದುವು ರಾಯನಿದಿರಿನಲಿ
ಹಲವು ಮಾತೇನಾ ಕೃಪನ ಕೌ
ಸಲನನಾ ಗುರುಸುತನನಾ ಸೌ
ಬಲನನಾ ಕೃತವರ್ಮಕನ ಮುರಿಯೆಚ್ಚು ಬೊಬ್ಬಿರಿದ ೩೩

ಸಿಕ್ಕಿದನು ಕುರುರಾಯನಾದುದು
ಮಕ್ಕಳಾಟಿಕೆ ಗುರುನದೀಸುತ
ರಿಕ್ಕಿ ಹೋದರು ನಮ್ಮ ದಳಪತಿ ಕಾದಿ ಬಳಲಿದನು
ಪೊಕ್ಕನರ್ಜುನನಿವರ ದರ್ಪವ
ನೊಕ್ಕಿ ತೂರಿದನಿನ್ನು ಪರಿವಾ
ರಕ್ಕೆ ಬಂದುದು ಪಂಥವೆನುತಿದ್ದುದು ಭಟಸ್ತೋಮ ೩೪

ಅರಸ ಚಿತ್ತೈಸಾರು ಸಾವಿರ
ವರಮಹಾರಥರೌಕಿದರು ಝು
ಲ್ಲರಿಯ ಝಾಡಿಯ ಸೆಳೆಯ ಸಿಂಧದ ಸುಳಿವ ಸೀಗುರಿಯ
ಬಿರಿಯೆ ನೆಲನುಬ್ಬೇಳ್ವ ಬೊಬ್ಬೆಯ
ಮುರಜ ಡಿಂಡಿಮ ಪಟಹದಾಡಂ
ಬರದಲೊದಗಿತು ಕೆಲನ ಕೈವಾರಿಗಳ ರಭಸದಲಿ ೩೫

ಫಡಫಡೆಲವೋ ಪಾರ್ಥ ರಾಯನ
ತುಡುಕಲಹುದೇ ಕೂಟಗಿರಿಯಲಿ
ಕಡಲು ಹೂಳುವುದೇ ಸಧಾರನಲಾ ಮಹಾದೇವ
ಹಿಡಿ ಮಹಾಸ್ತ್ರವನಿನ್ನು ಮುಂದಡಿ
ಯಿಡುಕಿದಡೆ ತಮ್ಮಾಣೆಯೆನುತವ
ಗಡಿಸಿ ನೂಕಿತು ನಿನ್ನವನ ಮನ್ನಣೆಯ ಪರಿವಾರ ೩೬

ಜನಪ ಕೇಳೈ ರಕುತಜಲದಲಿ
ನನೆದ ನೆಲ ಪುಡಿಮಸಗೆ ಕೆಂಧೂ
ಳಿನಲಿ ಕತ್ತಲಿಸಿತ್ತು ದಿಗ್ಭ್ರಮೆಯಾದುದಡಿಗಡಿಗೆ
ಇನಿಬರಾವೆಡೆ ಕರ್ಣನೋ ಫಲು
ಗುಣನೊ ಪಾಂಡವಬಲವೊ ನಿನ್ನಾ
ತನೊ ನಿಧಾನಿಸಲರಿಯೆನೊಂದರೆಗಳಿಗೆ ಮಾತ್ರದಲಿ ೩೭

ಮಳೆಗೆ ಹೆಚ್ಚಿದ ಧೂಳಿನಬ್ಬರ
ವಳಿವವೊಲು ವಿಜಯಾಸ್ತ್ರಹತಿಯಲಿ
ಹಿಳಿದ ಕರಿ ನರ ತುರಗದೊಡಲರುಣಾಂಬುಧಾರೆಯಲಿ
ಕಳಚಿತೀ ಕೆಂಧೂಳಿ ಬಾಣಾ
ವಳಿಯ ಕತ್ತಲೆಯೊಳಗೆ ಕಾಣೆನು
ದಳದೊಳಾರಾರೆಂದು ಮತ್ತರೆಗಳಿಗೆ ಮಾತ್ರದಲಿ ೩೮

ಬೆರಸಿ ಹೊಯ್ದರು ರಾವುತರ ರಥ
ತುರಗನಿಕರದ ಬೆಸುಗೆ ಬಿಡೆ ಮದ
ಕರಿಗಳಂಘವಿಸಿದವು ರಥ ಚಾಚಿದವು ಮುಂದಣಿಗೆ
ಹರಿಗೆಗಳ ತಲೆಗೊಡ್ಡಿ ಕಕ್ಕಡ
ಪರಶು ಖಂಡೆಯದವರು ಮಂಡಿಯ
ತೆರಳದಾಂತರು ಫಲುಗುಣನ ರಥದೆರಡುಪಕ್ಕದಲಿ ೩೯

ಅರಸ ಕೇಳು ಜಯದ್ರಥನ ಮೋ
ಹರದ ಮಧ್ಯದೊಳೆಂದು ಸಿಲುಕದ
ನರನ ರಥವೀ ಹೊಳ್ಳುಗರ ಹೋರಟೆಗೆ ಹೆದರುವುದೇ
ಕರಿಘಟಾವಳಿಗೊಂದು ಶರವಾ
ತುರಗದಳಕೊಂದಂಬು ಬಳಿಕೆರ
ಡೆರಡು ಶರದಲಿ ಕೆಡಹಿದನು ಕಾಲಾಳುತೇರುಗಳ ೪೦

ಆಳು ಮುರಿದುದಲೈ ಮಹಾರಥ
ರೇಳಿರೈ ನೀವಾರುಸಾವಿರ
ಮೇಲುದಳದವರಾಕೆವಾಳರು ನಿಮ್ಮ ಥಟ್ಟಿನಲಿ
ಮೇಳವದ ಪರಿ ಲೇಸು ಕರ್ಣನ
ಸೋಲದಲಿ ಸೀವರಿಸಿದರೆ ಭೂ
ಪಾಲನಾಣೆ ದೊಠಾರರಹಿರೆನುತೆಚ್ಚನಾ ಪಾರ್ಥ ೪೧

ಬಾಣಹತಿಗಕ್ಕುಡಿಸಿ ರಾಜ್ಯ
ಶ್ರೇಣಿ ಜರುಗಿತು ಶೌರ್ಯನಗರದ
ವಾಣಿಯರು ಹೊಕ್ಕಿರಿದು ಹೋಗಾಡಿದರು ಪತಿರಿಣವ
ಗೋಣಕೊಯ್ಲಿನ ಕಾವಣಕೆ ಮುಂ
ಗೇಣಿಕಾರನು ಮೊಳಗಿದನು ಫಡ
ಕೇಣವಿನ್ನೇಕೆನುತ ಕೈದೋರಿತು ಭಟಸ್ತೋಮ ೪೨

ಸೀಳಿದನು ಸಮರಥರ ಸುಳಿಗೊಂ
ಡಾಳ ಸದೆದನು ಸವರಿದನು ಭೂ
ಪಾಲಪುತ್ರರನಖಿಳದೇಶದ ರಾಜಸಂತತಿಯ
ಆಳು ಮುರಿದುದು ಮಾನಹಾನಿಯ
ಹೇಳುವಡೆ ನಗೆಯಂದನು ಕುರುಬಲ
ಜಾಲದಲಿ ಜಳ್ಳುಗರು ಬಿದ್ದುದು ಭಂಗ ಶರಧಿಯಲಿ ೪೩

ಬಿಡುದಲೆಯಲೋಡಿದರು ಬಿರುದಿನ
ತೊಡರ ಬಿಸುಟರು ವಾಹನಂಗಳ
ತೊಡಕ ಬಿಟ್ಟರು ನೆಲಕೆ ಕೈಲೆಡೆಗೊಟ್ಟು ಕೈದುಗಳ
ಅಡಸಿ ಕಾವ ನರಪ್ರತಾಪದ
ಕಡುವಿಸಿಲ ಬೇಗೆಯಲಿ ವೀರದ
ಮಡುಗಳುರೆ ಬತ್ತಿದವು ಮೋರೆಗಳೊಣಗಿ ಪಟುಭಟರ ೪೪

ಹೋಗದಿರಿ ಹೋಗದಿರಿ ದಳಪತಿ
ಯಾಗುಹೋಗರಿಯದೆ ನೃಪಾಲನ
ಮೂಗನಾರಿಗೆ ಮಾರಿದಿರಿ ಕೊಂಬುವರು ನಾವಲ್ಲ
ಈ ಗರುವರೀ ಪರಿ ಪಲಾಯನ
ಯೋಗಸಿದ್ಧರೆ ಸಾಹಸಿಕರೈ
ಜಾಗೆನುತ ಬೆಂಬತ್ತಿ ಹುಡಿಗುಟ್ಟಿದ ಮಹಾರಥರ ೪೫

ಇವರ ಹದನಿದು ಕರ್ಣನಾಡಿದ
ಕವಡಿಕೆಯ ಬೆಸಗೊಳ್ಳಿರೈ ಕೌ
ರವನ ಸರ್ವಗ್ರಾಸಕಿವೆ ರಾಹುಗಳು ಲಟಕಟಿಸಿ
ನಿವಗೆ ಹರಿಬದೊಳೊಂದು ಮುಟ್ಟಿಗೆ
ರವಣವುಂಟೇ ಹಾಯ್ಕಿ ನಿಮ್ಮಾ
ಟವನು ನೋಡುವೆನೆಂದು ಕರೆದನು ಕೃಪನ ಗುರುಸಂತನ ೪೬

ಅರಸ ಕೇಳಾಕ್ಷಣಕೆ ಮುಗ್ಗಿತು
ಮರವೆ ನೆಗ್ಗಿತು ಭೀತಿ ಧೈರ್ಯದ
ತಿರುಳು ಬಲಿದುದು ಕೋಪ ತಳಿದುದು ಖೋಡಿ ನೀರೊರೆಯೆ
ಕರಣಪಲ್ಲಟಪಾಡಿನಲಿ ಸಂ
ವರಿಸಿಕೊಂಡುದು ವೀರರಸವು
ಬ್ಬರಿಸಿ ಸರ್ವೇಂದ್ರಿಯವ ಮುಸುಕಿತು ನಿಮ್ಮ ದಳಪತಿಯ ೪೭

ನೋಡಿದನು ಕೆಲಬಲನನುಗಿದೀ
ಡಾಡಿದನು ನಟ್ಟಂಬುಗಳ ಹರಿ
ಜೋಡಬಿಟ್ಟನು ತೊಳೆದನಂಗೋಪಾಂಗ ಶೋಣಿತವ
ಕೂಡೆ ಕಸ್ತುರಿಗಂಧದಲಿ ಮುಳು
ಗಾಡಿ ದಿವ್ಯದುಕೂಲದಲಿ ಮೈ
ಗೂಡಿ ಮೆರೆದನು ಕರ್ಣನನುಪಮ ತೀವ್ರತೇಜದಲಿ ೪೮

ಬೋಳವಿಸಿದನು ಶಲ್ಯನನು ಮಿಗೆ
ಸೂಳವಿಸಿದನು ಭುಜವನುಬ್ಬಿನೊ
ಳಾಳವಿಸಿದನು ಚಾಪಗಾನಸ್ವಾನಕವನರಿದು
ಮೇಳವಿಸಿ ನಿಜರಥವ ಕೆಲದಲಿ
ಜೋಳವಿಸಿ ಹೊದೆಯಂಬನಹಿತನ
ಪಾಳಿಸುವಡಂಬಿದೆಯೆನುತ ತೂಗಿದನು ಮಾರ್ಗಣೆಯ ೪೯

ಫಡಫಡೆಲವೋ ಪಾರ್ಥ ಜೂಜಿಂ
ಗೊಡಬಡಿಕೆ ನಿಮಗೆಮಗೆ ಹಾರುವ
ರೊಡನೆ ಹೆಕ್ಕಳವೇಕೆ ಹೋಗದಿರಿತ್ತಲಿದಿರಾಗು
ಹಿಡಿದ ಮುಷ್ಟಿಗೆ ಸರ್ವ ರವಣವ
ಕೊಡಹಿ ನಿನ್ನೆದೆವೆರಳಕೊಳ್ಳದೆ
ಬಿಡುವೆನೇ ಬಾ ಎನುತ ಕರೆದನು ಕರ್ಣನರ್ಜುನನ ೫೦

ಅರಸ ಕೇಳೈ ಸಿಡಿಲಗರ್ಜನೆ
ಗುರವಣಿಪ ಕೇಸರಿಯವೊಲು ಕೃಪ
ಗುರುಸುತರ ಬಿಸುಟಿತ್ತ ಹಾಯ್ದನು ಹಗೆಯ ಸಮ್ಮುಖಕೆ
ತಿರುಪು ಸದರವು ನಿನಗೆ ಗತಿಕಾ
ಹುರ ಕಣಾವಳಿ ಕಂಠಗತ ಬಾ
ಹಿರನು ನೀನೆಲೆ ಕರ್ಣ ಫಡ ಹೋಗೆನುತ ತೆಗೆದೆಚ್ಚ ೫೧

ಭರತಭಾಷೆಯಲಾ ವಿಧಾವಂ
ತರು ವಿರಾಟನ ಮನೆಯಲಿದ್ದುದ
ನರಿಯೆವೇ ನಾವೆತ್ತ ಬಲ್ಲೆವು ನಿಮ್ಮ ವಿದ್ಯೆಗಳ
ಸರಸಮಾತಂತಿರಲಿ ಚಾಪ
ಸ್ಫುರಣದಭಿನಯದಂಗಹಾರದ
ಪರಿಯ ತೋರಾ ಎನುತ ತೆಗೆದೆಚ್ಚನು ಧನಂಜಯನ ೫೨

ಝಳಪಿಸಿದುದೆರಡಂಕದಲಿ ನಿ
ಷ್ಕಲಿತ ತೇಜಃಪುಂಜವಿಬ್ಬರ
ಹಳಹಳಿಕೆ ಹಬ್ಬಿದುದು ಗಬ್ಬರಿಸಿದುದು ಗಗನದಲಿ
ಹಿಳುಕನೀದವೊ ಹಿಳುಕು ಮೊನೆಯಲ
ಗಲಗನುಗುಳ್ದವೊ ಕಣೆಗಳಲಿ ಕಣೆ
ತಳಿತವೋ ತ್ರೈಲೋಕ್ಯಬಾಣಾದ್ವೈತವಾಯ್ತೆಂದ ೫೩

ಪರಶುರಾಮನ ಕಾರ್ತವೀರ್ಯನ
ವರ ದಿಳೀಪನ ದುಂದುಮಾರನ
ಭರತ ದಶರಥ ನಹುಷ ನಳ ರಾಘವನ ಲಕ್ಷ್ಮಣನ
ಸರಿಮಿಗಿಲು ಕಲಿಪಾರ್ಥನೀ ವಿಂ
ಕ್ಕರಸುಗಳ ಪಾಡೇ ಕಿರೀಟಿಯ
ದೊರೆಯದಾವವನೆನುತ ಕೊಂಡಾಡಿತು ಸುರಸ್ತೋಮ ೫೪

ತಾರಕನ ಜಂಭನ ನಿಕುಂಭನ
ತಾರಕಾಕ್ಷನ ಕಾಲನೇಮಿಯ
ವೀರ ಮಹಿಷಾಸುರನ ಬಾಣಾಸುರನ ರಾವಣನ
ತೋರಹತ್ತರ ಬಾಹುಬಲವನು
ಸಾರಿಯಾ ಕರ್ಣಂಗೆ ಪಿಕ್ಕಿನ
ಸಾರಿಹೃದಯರು ನಿನಗೆ ಸರಿಯಲ್ಲೆಂದುದಮರಗಣ ೫೫

ಪೂತು ಮಝರೇ ಕರ್ಣ ವಿಶಿಖ
ವ್ರಾತವೊಂದಿನಿತಿಲ್ಲ ಲಂಕೆಯ
ಘಾತಕರ ಚಾಪಳವ ಕಂಡೆನು ಚಾಪತಂತ್ರದಲಿ
ಈತನತಿಶಯಬಾಣರಚನಾ
ಜಾತಿಯಿದು ಭೀಷ್ಮಾದಿಸುಭಟ
ವ್ರಾತಕೆಲ್ಲಿಯದೆಂದು ತಲೆದೂಗಿದನು ಹನುಮಂತ ೫೬

ಅದ್ದು ದುಮ್ಮಾನದಲಿ ಹೊಡೆಮಗು
ಳೆದ್ದುದೀ ಕುರುಸೇನೆ ತಡೆಯಲಿ
ಬಿದ್ದುದತಿಸಂತೋಷ ಸಾರಕ್ಷೀರಜಲಧಿಯಲಿ
ಗೆದ್ದನೈ ನಿನ್ನಾತನೊಸಗೆಯ
ಬಿದ್ದಿನರಲ್ಲೈ ನಾವು ಪರರಿಗೆ
ಬಿದ್ದುದೊಂದು ವಿಘಾತಿಯೆಂದನು ಸಂಜಯನು ನಗುತ ೫೭

ಇಪ್ಪತ್ತೈದನೆಯ ಸಂಧಿ

ಸೂ. ರಾಯಪರಬಲಮಥನ ಕೌರವ
ರಾಯ ಧರಣಿ ವರಾಹ ಕಲಿರಾ
ಧೇಯನೆಚ್ಚನು ರೌದ್ರದರ್ಪದ ಸರ್ಪಬಾಣದಲಿ

ಹೇಳು ಸಂಜಯ ಹಗೆಗೆ ಬಿದ್ದ ವಿ
ತಾಳವಾವುದು ಕಿವಿಗಳೈದವು
ನಾಲಗೆಯನೊಡ್ಡುವೆನು ವಚನಾಮೃತದ ಸವಿ ಹಿರಿದೆ
ಜಾಳಿಸಿತೆ ಹಗೆ ಕರ್ಣ ಗೆಲಿದನೆ
ಕಾಳೆಗವನೀ ಮಾತುಗಳನೇ
ಹೇಳುತಿರು ಸಾಕೆಂದು ನುಡಿದನು ನಗುತ ಜನನಾಥ ೧

ಅವನಿಪತಿ ಕೇಳುವಡೆ ಸಾವಿರ
ಕಿವಿಗಳೈದವು ನಿಮ್ಮ ಕರ್ಣನ
ಬವರದಲಿ ರೂಢಿಸಿದ ರೌದ್ರದ ರಾಜಕಾರಿಯವ
ಸವಡಿವೆರಳಿನ ಸೇದುವಂಬಿನ
ತವಕಿಗನ ತಗ್ಗಿಸುವೆ ನಿಲ್ಲೆನು
ತವಗಡದ ಕೋಪದಲಿ ಕಿಡಿಕಿಡಿವೋದನಾ ಕರ್ಣ ೨

ಮೀರಿತುರಿ ಸುಯ್ಲಿನಲಿ ಕಂಗಳು
ಹೇರಿದವು ಕಡುಗೆಂಪನೊಗಡಿಸಿ
ಕಾರಿದವು ರೋಮಾಳಿ ರೋಷ ಸ್ವೇದಬಿಂದುಗಳ
ಕೌರಿದವು ಕುಡಿಮೀಸೆ ಕಾದುದು
ಮೋರೆ ಬದ್ಧಭ್ರುಕುಟಿಯಲಿ ಹುರಿ
ಯೇರಿತಧಿಕಕ್ರೋಧತಾಮಸ ನಿಮ್ಮ ದಳಪತಿಯ ೩

ಉಗಿದನುರಗಾಸ್ತ್ರವನು ಹೊಮ್ಮೂ
ಡಿಗೆಯೊಳಗೆ ಹೊರಕಯ್ಯ ಗಾಳಿಗೆ
ಹೊಗೆಯ ಹೊದರಿನ ಹೊರಳಿ ಹಬ್ಬಿತು ಕೂಡೆ ಕಿವಿಯಿಡುತ
ಗಗನ ಗಮನದ ನಿಖಿಳ ವಿಹಗಾ
ಳಿಗಳು ಬೆಂದವು ಗಾಢ ಗರಳದ
ಸೊಗಡ ಸೋಹಿಗೆ ಕಂಠಣಿಸಿತೆರಡೊಡ್ಡು ಕಳವಳಿಸಿ ೪

ಬೆರಳಲಂಬನು ತೂಗಲುರಿ ಫೂ
ತ್ಕರಣೆಯಲಿ ಪಂಠಿಸಿತು ಸುಯ್ಲಿನ
ಧರಧುರದ ಬೆಳುನೊರೆಯ ಲಹರಿಯ ವಿಷದ ಲೋಳೆಗಳ
ಉರವಣಿಸಿದರು ಗರಳ ರಸದ
ಬ್ಬರದ ಬೊಬ್ಬುಳಿಕೆಗಳು ಮುಸುಕಿತು
ಹೊರಳಿಗಿಡಿಗಳ ಛಟಛಟಧ್ವನಿ ಮಸಗಿತಡಿಗಡಿಗೆ ೫

ಹೊರೆಯವರು ಮರನಾದರಾ ರಥ
ತುರಗತತಿ ಲಟಕಟಿಸಿದವು ನಿ
ಬ್ಬರದ ಬೆರಗಿನೊಳದ್ದು ಹೋದನು ಶಲ್ಯ ನಿಮಿಷದಲಿ
ಉರಿ ಛಡಾಳಿಸಿ ಫೂತ್ಕೃತಿಯ ಪಂ
ಜರದೊಳಗೆ ಪಲ್ಲವಿಸಿತುಬ್ಬಿದ
ಹೊರಳಿಹೊಗೆಯಂಬರವ ತುಂಬಿತು ಭೂಪ ಕೇಳೆಂದ ೬

ಆವರಿಸಿದವು ಪುಷ್ಕಳಾವ
ರ್ತಾವಳಿಗಳೆನೆ ಬಹಳವಿಷಧೂ
ಮಾವಳಿಯಲೇ ಧಾತುಗೆಟ್ಟುದು ಸಕಳಭುವನಜನ
ದೇವತತಿ ಬೆಂಡಾಯ್ತು ಮೊದಲಿನ
ದೇವರುಬ್ಬಿದರುರಗಪತಿಯು ಫ
ಣಾವಳಿಯ ಗುಡಿಯೆತ್ತಿದವು ಪಾತಾಳಲೋಕದಲಿ ೮

ಭುಜವ ಹೊಯ್ದರು ಸೂರ್ಯತಕ್ಷಕ
ರಜನ ಸಭೆಯಲಿ ಭಯ್ಯದಿ ಸುರಪತಿ
ಭಜಿಸಿದನು ಗರುಡನನು ನಿರ್ವಿಷಮಸ್ತು ನರಗೆನುತ
ಗಜರಿದವು ನಿಸ್ಸಾಳವಾದ್ಯ
ವ್ರಜದ ಕಹಳೆಯ ಭಟರ ಬೊಬ್ಬೆಯ
ಗಜಬಜಿಕೆ ಘಾಡಿಸಿತು ಕೌರವಸೈನ್ಯಶರಧಿಯಲಿ ೮

ಹಣುಗಿದರು ಭೀಮಾದಿಗಳು ಕ
ಟ್ಟೊಣಗಿಲಾದವು ಭಟರ ಮೋರೆಗ
ಳೆಣಿಸುತಿರ್ದರು ಜಪವನರ್ಜುನ ಕೃಷ್ಣನೆಂಬವರು
ಸೆಣಸುವನು ಗಡ ಕೌರವನೊಳಿ
ನ್ನುಣಲಿ ಧರೆಯನು ಧರ್ಮಸುತನೆಂ
ದಣಕವಾಡಿತು ನಿನ್ನ ದುಷ್ಪರಿವಾರ ಹರುಷದಲಿ ೯

ಮೂಡಿಗೆಯೊಳಂಬುಗಿದು ತಿರುವಿಗೆ
ಹೂಡಲೀ ಹದನಾಯ್ತು ಚಾಪದೊ
ಳೋಡಿಸಿದಡೇನಹುದು ಹರಹರ ಮಹಾಸ್ತ್ರವಲೆ
ನೋಡಿರೈ ಗುರುಸುತಕೃಪಾದಿಗ
ಳೋಡದಿರಿ ನೀವೆನುತ ಪುಳಕದ
ಬೀಡಿನಲಿ ಮೈಮುಳುಗಿ ತೂಗಾಡಿದನು ಕುರುರಾಯ ೧೦

ಉರಿಯ ಜೀರ್ಕೊಳವಿಗಳವೊಲು ಪೂ
ತ್ಕರಿಸಿದವು ಫಣಿ ವದನದಲಿ ದ
ಳ್ಳುರಿಯ ಸಿಮಿಸಿಮಿಗಳ ತುಷಾರದ ಕಿಡಿಯ ತುಂತುರಿನ
ಹೊರಳಿಗಿಡಿಗಳ ಕರ್ಬೊಗೆಯ ಕಾ
ಹುರದ ಸುಯ್ಲಿನ ಝಳವ ಗರಳಾ
ಕ್ಷರದ ಜಗಿಯಲಿ ಮಾತು ತೋರಿತು ಬೆಸಸು ಬೆಸಸೆನುತ ೧೧

ಹೂಡಿದನು ತಿರುವಿನಲಿ ಬಾಣದ
ಝಾಡಿಯುರಿನಾಲಗೆಯ ನಿರುತವ
ನೋಡಿ ಪಾರ್ಥನ ಗಳಕೆ ಸಂಧಾನವ ನಿಧಾನಿಸುತ
ನೋಡಿದನು ಶಲ್ಯನನು ಮಿಗೆ ತೂ
ಗಾಡಿದನು ಕೌರವನ ಪುಣ್ಯದ
ಬೀಡು ಬಿಡುವಡೆ ಕಾಣಲಹುದಿಂದೆಂದನಾ ಕರ್ಣ ೧೨

ಏನು ಸಾರಥಿ ಸರಳು ಪಾಂಡವ
ಸೇನೆಯನು ಗೆಲಲಹುದೆ ಪಾರ್ಥನ
ಮಾನಿನಿಗೆ ವೈಧವ್ಯದೀಕ್ಷಾವಿಧಿಯ ಕೊಡಲಹುದೆ
ಆನಲಮ್ಮುವರುಂಟೆ ನಿನಗಿದು
ಸಾನುರಾಗವೆ ಹೇಳೆನಲು ರವಿ
ಸೂನುವಿನ ರೌದ್ರಾಸ್ತ್ರವನು ಹೊಗಳಿದನು ಮಾದ್ರೇಶ ೧೩

ಲೇಸುಮಾಡಿದೆ ಕರ್ಣ ಕೌರವ
ನೀಸುದಿನ ಸಾಕಿದ ಫಲವ ನೀ
ನೈಸಲೇ ತೋರಿದವನೀ ನೃಪಸೈನ್ಯಶರಧಿಯಲಿ
ಈಸು ಕಾಳಿಗವಾದುದೀ ಕ
ಟ್ಟಾಸುರದ ಸರಳೆಲ್ಲಿ ಗುಪ್ತಾ
ವಾಸವಾದುದು ಪೂತುರೆಂದನು ಶಲ್ಯನಿನಸುತನ ೧೪

ಆಯಿತಿದು ಸರಳೊಳ್ಳಿತೈ ಕುರು
ರಾಯನಭ್ಯುದಯ ಪ್ರಪಂಚವಿ
ದಾಯಿತೌ ಸಂಧಾನವೊಡಬಡದೆನ್ನ ಚಿತ್ತದಲಿ
ಸಾಯಕವ ನೀ ತಿರುಗಿ ತೊಡು ನಿ
ರ್ದಾಯದಲಿ ನೆಲನಹುದಲಾ ರಾ
ಧೇಯ ಎಂದನು ಶಲ್ಯನವನೀಪಾಲ ಕೇಳೆಂದ ೧೫

ಕೊರಳಿಗೊಡ್ಡಲು ಹೊಳ್ಳುವಾರಿದ
ಸರಳು ಮಕುಟವ ತಾಗುವುದು ಮೇ
ಣುರಕೆ ತೊಟ್ಟರೆ ಕೊಯ್ವುದೀಗಳೆ ಕೊರಳನರ್ಜುನನ
ಮರಳಿ ತೊಡು ತೊಡು ಬೇಗ ಕೌರವ
ನರಸುತನವುಳಿವುದು ಕಣಾ ಹೇ
ವರಿಸದಿರು ಹೇಳುವುದು ಪಥ್ಯವಿದೆಂದನಾ ಶಲ್ಯ ೧೬

ಒಂದು ಶರಸಂಧಾನ ನಾಲಗೆ
ಯೊಂದು ನಮ್ಮಲಿ ಕುಟಿಲವಿದ್ಯವ
ನೆಂದು ಕಂಡೈ ಶಲ್ಯ ನಾವಡಿಯಿಡೆವಧರ್ಮದಲಿ
ಇಂದು ಹೂಡಿದ ಶರವನಿಳುಹುವ
ದಂದವೇ ನೀನರಿಯೆ ಹೆರಸಾ
ರೆಂದು ತಿರುವಿನೊಳಂಬನೊದೆದನು ಕರ್ಣ ಬೊಬ್ಬಿಡುತ ೧೭

ಏನಹೇಳುವೆ ಬಳಿಕ ಭುವನ
ಗ್ಲಾನಿಯನು ತೆಗೆದೋಡಿದರು ವೈ
ಮಾನಿಕರು ಪೆಂಠಣಿಸಿತುರಿಯುಪ್ಪಳಿಸಿತಂಬರವ
ಕಾನಿಡುವ ಕಬ್ಬೊಗೆಯ ಚೂರಿಸು
ವಾನನದ ಕಟವಾಯ ಲೋಳೆಯ
ಜೇನಹುಟ್ಟಿಯ ಬಸಿವ ವಿಷದಲಿ ಬಂದುದುರಗಾಸ್ತ್ರ ೧೮

ಕಾದಲೆಳಸಿದ ಪಾಂಡವರ ಸಂ
ವಾದ ತೀರಿತು ಕೌರವೇಂದ್ರನು
ಸಾಧಿಸಿದ ಹಗೆ ಸಫಲವಾದುದು ಸಮರಭೂಮಿಯಲಿ
ಹೋದನರ್ಜುನನೀ ಮಹಾಸ್ತ್ರದ
ಬಾಧೆಗಿದಿರಿಲ್ಲೆನುತ ಘನಚಿಂ
ತೋದಧಿಯಲುರೆ ಮುಳುಗಿ ಮರುಗಿತು ಮೇಲೆ ಸುರಕಟಕ ೧೯

ಹಾ ವೃಕೋದರ ನಕುಲ ಹಾ ಸಹ
ದೇವ ಹಾ ಧರ್ಮಜ ಧನಂಜಯ
ಹಾವಿನಗ್ನಿಗೆ ಹವಿಗಳಾದಿರೆ ಹಾ ಮಹಾದೇವ
ಸಾವಡೆಯು ಶಸ್ತ್ರಪ್ರಹಾರದ
ಸಾವು ಕ್ಷತ್ರಿಯ ಕುಲಕೆ ಭಂಗವೆ
ಹಾ ವಿಧಿಯೆ ಎಂದೊದರಿ ಮರುಗಿತು ಪಾಂಡುಸುತಸೇನೆ ೨೦

ತುರಗತತಿ ತಲೆಗುತ್ತಿದವು ಮಂದ
ಕರಿಗಳೊದರಿದವಸವಳಿದು ರಥ
ತುರಗವೆಳೆದವು ರಥವನಾಗಳೆ ವಿಷದ ಝಳಹೊಯ್ದು
ಸುರಿವ ಗರಳದ ಗಾಳಿ ಸೋಂಕಿದ
ನರಗೆ ನಂಜೇರಿತು ಭಯಂಕರ
ತರದ ಭಾರಿಯ ವಿಷಕೆ ಕೊಳ್ಗುದಿಗೊಂಡುದರಿಸೇನೆ ೨೧

ಗರುಡಪಂಚಾಕ್ಷರಿಯ ಮಂತ್ರೋ
ಚ್ಚರಣೆಯಲಿ ಭೂನಾಗಸತ್ವದ
ಬೆರಳ ಮುದ್ರಿಕೆಗಳಲಿ ರಕ್ಷಾಯಂತ್ರಮಂತ್ರದಲಿ
ಮರಕತದ ಘಂಟಿಕೆಯಲಿ ವಿಷಸಂ
ಹರಣ ವಿವಿಧೋಪಾಯದಲಿ ನೃಪ
ವರರು ನಿಂದುದು ಭೀಮಸೇನಾದಿಗಳು ದುಗುಡದಲಿ ೨೨

ಹಿಂದೆ ಭಗದತ್ತಾಯುಧದಿ ನೆರೆ
ಬೆಂದು ಬದುಕಿತು ಬಳಿಕಲೀ ಗುರು
ನಂದನನ ನಾರಾಯಣಾಸ್ತ್ರದಿನಾದುದಪಘಾತ
ಅಂದುಪಾಯದಲುಳಿದೆವೀ ಗೋ
ವಿಂದನಿಂದಪಮೃತ್ಯುವಿದನು ಮು
ಕುಂದ ತಾನೇ ಬಲ್ಲನೆನುತಿರ್ದುದು ಭಟಸ್ತೋಮ ೨೩

ಜನಪ ಕೇಳೈ ಬಳಿಕ ಭೀಮಾ
ರ್ಜುನ ನಕುಲ ಸಹದೇವ ಸಾತ್ಯಕಿ
ತನತನಗೆ ದಿವ್ಯಾಸ್ತ್ರನಿಕರದಲೆಚ್ಚರಹಿಶರವ
ಅನಿತು ಶರವನು ನುಂಗಿ ಮಗುಳೆ
ಚ್ಚನಿತನೊಳಕೊಳುತಾಜ್ಯಧಾರೆಗೆ
ನನೆದ ಹುತವಹನಂತೆ ಹೆಚ್ಚಿತು ತೀವ್ರ ಫಣಿಬಾಣ ೨೪

ಆರುನಿಲಿಸುವರಕಟ ದುಷ್ಕೃತಿ
ಕಾರ ಶರವಿದು ಭೀಮಪಾರ್ಥರ
ಕೂರಲಗುಗಳು ಶಿವಶಿವಾ ಕೆಚ್ಚಾಯ್ತು ಕದಳಿಗಳ
ಕೌರವನ ಜಯವಧುವಿನೊಡನೆಯ
ಸೇರುಗೆಯ ಕೂಟಣೆಯೊ ಶರವಿ
ನ್ನಾರಿಗೊರಲುವೆವಕಟೆನುತ ತಲ್ಲಣಿಸಿತರಿಸೇನೆ ೨೫

ನಾಲಗೆಯ ಚೂರಣದ ದಳ್ಳುರಿ
ಜಾಳಿಗೆಯ ಚಮ್ಮಟದ ಗರಳದ
ಲೋಳೆಗಳ ಚಾರಣದ ಕಿಡಿಗಳ ಖಡುಗ ಪೂರಯದ
ಧೂಳಿಯುಗೆಯಬ್ಬರದ ಬಲುಗೈ
ಯಾಳವೊಲು ಭುಗಿಲೆಂಬ ರವದಲಿ
ಮೇಲುವಾಯ್ದುದು ಕೊರಳ ಸರಿಸಕೆ ಕಲಿಧನಂಜಯನಾ ೨೬

ಅರಸ ಕೇಳೇಸೇಸು ಬಾರಿಯ
ಕೊರಳಡಾಯುಧ ಕಳಚದೇಸು
ಬ್ಬರದ ಮಾರಿಯ ಬಿಂಕ ಮುರಿಯದು ಪಾಂಡುತನಯರಿಗೆ
ಹರಿಯ ಹರಹಿನ ವಜ್ರಪಂಜರ
ದರಗಿಣಿಯಲೇ ಪಾರ್ಥನಹಿ ಮುಂ
ಜರನ ಮುರುಕುವ ಕೊಂಬುದೇ ಧೃತರಾಷ್ಟ್ರ ಕೇಳೆಂದ ೨೭

ನಡುಗುತಿರ್ದುದು ಸುರಕಟಕ ಬೊ
ಬ್ಬಿಡುತಲಿರ್ದುದು ನಮ್ಮ ಬಲ ಮೊರೆ
ಯಿಡುತಲಿರ್ದುದು ಪಾರ್ಥನಳವಿಗೆ ಪಾಂಡುಸುತಸೇನೆ
ತಡೆಯದೈದಂಗುಲಕೆ ರಥವನು
ನೆಡಿಸಿದನು ಹರಿ ಧರೆಗೆ ಪಾರ್ಥನ
ಮುಡಿಯ ಸರಿಸಕೆ ಬಾಣ ಬಂದುದು ಕೊಲುವ ತವಕದಲಿ ೨೮

ಅಣೆದುದಹಿ ಮಕುಟವನು ತಾರಾ
ಗಣದ ಮಧ್ಯದ ಚಂದ್ರಮನ ಹೊ
ಯ್ದಣಲೊಳಡಸಿದ ರಾಹುವಿನ ರಹಿಯಾಯ್ತು ನಿಮಿಷದಲಿ
ಕಣಿಕೆ ಮುರಿದುದು ಮೌಕ್ತಿಕದ ಕೀ
ಲಣದ ವಜ್ರದ ಮಾಣಿಕದ ವರ
ಮಣಿಗಳೊಕ್ಕವು ರಕುತ ಮಿದುಳೊಡಸೂಸಿದಂದದಲಿ ೨೯

ಬಿದ್ದುದೇ ಫಲುಗುಣನ ತಲೆಯುಡಿ
ಗದ್ದುದೇ ನಮ್ಮಾಟ ಜಯವಧು
ಕದ್ದಳೇ ರಣದೊಸಗೆಗೇಳ್ವಳೆ ದ್ರೌಪದಾದೇವಿ
ಇದ್ದುದೇ ಧರ್ಮಜನ ಸಿರಿ ತಳ
ಕದ್ದುದೇ ನಮ್ಮೊಡಲನಸು ಬಿಡ
ದಿದ್ದುದೇ ಹಾ ಎನುತ ಭೀಮಾದಿಗಳು ಹೊರಳಿದರು ೩೦

ವಿಷವ ತೆಗೆದಳು ದ್ರುಪದಸುತೆ ಕೈ
ಮುಸುಕಿನಲಿ ಚೀಲಾಯವುಗಿದನು
ವಸುಮತೀಶ್ವರನಾ ಮುಹೂರ್ತಕೆ ದೂತರೈತಂದು
ಒಸಗೆ ಜೀಯರ್ಜುನನ ಮಕುಟದ
ಬೆಸುಗೆ ಮುರಿದುದು ಹರಿ ವರೂಥವ
ಕುಸಿಯಲೊತ್ತಿದನಿಂದು ತಪ್ಪಿತು ತೀವ್ರ ಫಣಿಬಾಣ ೩೧

ಎನಲು ಸಂತೈಸಿತ್ತು ರಾಯನ
ಮನೆಯವರು ಪಾಂಡವರ ಸೇನಾ
ವನಧಿ ಬಿಡೆ ಗರ್ಜಿಸಿತು ಬಹುವಿಧ ವಾದ್ಯರಭಸದಲಿ
ವಿನುತ ಮಕುಟವ ಕಡಿದು ಕಂಗನೆ
ಕನಲಿತಹಿ ತಲೆ ಬದುಕಿತೇ ಹಾ
ಎನುತ ಹಲುಮೊರೆಯುತ್ತ ಹರಿದುದು ಕರ್ಣನಿದ್ದೆಡೆಗೆ ೩೨

ತೊಡು ತೊಡಿನ್ನೊಮ್ಮೆನ್ನನಕಟಾ
ಕೆಡಿಸಿದೆಯಲಾ ರಾಜಕಾರ್ಯವ
ನುಡಿದು ಹೇಳನೆ ನಿನ್ನ ಸಾರಥಿ ಲಕ್ಷ್ಯಭೇದನವ
ಅಡಗಲಿನ್ನೀರೇಳು ಭುವನದೊ
ಳಡಗಿ ತಿಂಬೆನು ನರನನೆಂದವ
ಗಡಿಸಿ ಕರ್ಣನ ಬೆಸನ ಬೇಡಿತು ಮತ್ತೆ ಫಣಿಬಾಣ ೩೩

ಶಿವನ ಮರೆಯನು ಹೊಗಲಿ ಮೇಣ್ ವಾ
ಸವನ ಸೀಮೆಯೊಳಿರಲಿ ಪಾತಾ
ಳವನು ಹೊಗಲಂಬುಧಿಯ ಮುಳುಗಲಿ ಜವನ ಕೆಳೆಗೊಳಲಿ
ಭುವನಕತಿಶಯವಾಗಿ ರಣದಲಿ
ತಿವಿವೆ ಪಾರ್ಥನನೆನಲು ಕೇಳಿದು
ರವಿಯ ಮಗ ಬೆರಗಾಗಿ ಬೆಸಗೊಂಡನು ಶಿಳೀಮುಖವ ೩೪

ಎಸಲು ಸರಳುಗಳತ್ತಲೇ ಕೀ
ಲಿಸುವವಲ್ಲದೆ ಮತ್ತೆ ಮರಳಿದು
ಬೆಸನ ಬೇಡುವ ಬಾಣವೆಂಬುದನರಿಯೆ ನಾ ಕೇಳ್ದು
ವಿಶಿಖ ನೀನಾರೆನಲು ಕಿಡಿಗಳ
ಕುಸುರಿಗಳನುದ್ಗರಿಸಿ ನುಡಿದುದು
ವಿಷಮನರಿಯಾ ಕಾಳಕೂಟ ಕರಂಡ ಕಾನನದ ೩೫

ಉರಗಪತಿ ತಾನಶ್ವಸೇನನು
ಸುರಪತಿಯ ಖಾಂಡವದೊಳಿಹೆನದ
ನುರುಹುವಂದಿನೊಳೆನ್ನನರೆಗಡಿದೀ ದುರಾತ್ಮಕನ
ಶಿರವನರಿವೆನು ಬೇಗ ತೊಡು ತೊಡು
ಬೆರಗ ಹಾರದಿರೆನಲು ಸತ್ಯದ
ಪರಮಸೀಮೆಗೆ ತಪ್ಪಲಮ್ಮದೆ ಕರ್ಣನಿಂತೆಂದ ೩೬

ಅರಿಯೆ ನಾ ನೀನೆಂದು ಲೋಗರ
ಮರೆಯಲರಿಗಳ ಗೆಲುವ ಕರ್ಣನೆ
ಯರಿಯಲಾ ನೀನೆನ್ನ ಹವಣನು ತೊಡುವುದಿಲ್ಲೆನಲು
ಮರುಗಿದನು ಶಲ್ಯನು ನೃಪಾಲನ
ನಿರಿದೆಯೋ ರಾಧೇಯ ನೀನೆಂ
ದ್ಮರುಬೆಯಲಿ ಕೋಪಿಸುತ ಕರ್ಣನ ಬಯ್ದು ಗಜರಿದನು ೩೭

ತೊಡು ತೊಡೆಲವೋ ಶರವು ರಿಪುವನು
ತಡೆಗಡಿವೆನೆಂದೊದರುತದೆ ನೃಪ
ನೊಡೆತನಕೆ ನೀ ಬಯಸಿದಾ ಮತವುಂಟೆ ರಿಪುಗಳಲಿ
ನುಡಿದ ಭಾಷೆಗೆ ನಾವು ಹೇಳಿತ
ನೊಡಬಡುವ ನೀನಲ್ಲ ಕುರುಪತಿ
ಬಿಡದೆ ನಿನ್ನನು ಸಲಹಿತಕ್ಕುಪಕಾರಿ ನೀನೆಂದ ೩೮

ಎಲವೊ ನಿನ್ನನು ಜಗವರಿಯೆ ಕ
ಬ್ಬಿಲನ ಮಗನನು ಮರಸಿ ಕುರುಪತಿ
ಕುಲಜನನು ಮಾಡಿದನಲಾ ಒಡನುಂಡು ಪತಿಕರಿಸಿ
ನೆಲನು ಹೇಸದೆ ನಿನ್ನ ಕೀರ್ತಿಯ
ಬೆಳಗು ಮಾಸದೆ ಬಿಡದೆ ಸಾಕಿದ
ಹೊಲೆಯನವರಸಕೊದಗುವನು ನೀ ಕಷ್ಟ ಹೋಗೆಂದ ೩೯

ನಂಬಿ ಹಿಡಿದರೆ ನದಿಯುಮಗ ಹಗೆ
ಯಂಬಿಗಿತ್ತನು ಕಾಯುವನು ಮಗ
ನೆಂಬ ನೆವದಲಿ ತನುವ ಬಿಸುಟನು ಗರುಡಿಯಾಚಾರ್ಯ
ಅಂಬು ಬೆಸನನು ಬೇಡಿದಡೆ ನೀ
ನೆಂಬನೀ ವಿಧಿಯಾದೆ ಮೂವರ
ನಂಬಿ ಕೌರವ ಕೆಟ್ಟನಕಟಕಟೆಂದನಾ ಶಲ್ಯ ೪೦

ಮಾತೆಗಿತ್ತೆನು ಭಾಷೆಯನು ನಿ
ನ್ನಾತಗಳೊಳೈವರೊಳಗಾರಿದಿ
ರಾತಡೆಯುಂ ತಲೆಗಾದು ಬಿಡುವೆನು ಕೊಲುವುದಿಲ್ಲೆಂದು
ಮಾತುಗಳು ಕವಲಾದ ಬಳಿಕಿ
ನ್ನೇತಕೀ ತನುವಿದನು ಪಾರ್ಥನ
ಖಾತಿಗೊಪ್ಪಿಸಿ ಕಳೆವೆನೆಂದನು ತನ್ನ ಮನದೊಳಗೆ ೪೧

ಮರುಳಲಾ ಮಾದ್ರೇಶ ಮರಳಿದ
ಶರವ ತೊಡುವೆನೆ ಸೈರಿಸೆನೆ ಕಾ
ತರಿಸಿ ವಾಘೆಯಂ ಬಿಸುಟು ಕಿಡಿಕಿಡಿವೋಗಿ ಖಾತಿಯಲಿ
ಅರಸನೊಲಿದಂತಾಗಲೆನ್ನದು
ಮರುಳುತನ ಕುಲಹೀನನಲಿ ಗುಣ.
ವರಸಲೇಕೆಂದೆನುತ ಧುಮ್ಮಿಕ್ಕಿದನು ಧಾರುಣಿಗೆ ೪೨

ಕಂಡುದೀ ವ್ಯತಿಕರವನೀತನ
ನಂಡಲೆದು ಫಲವಿಲ್ಲಲಾ ಕೈ
ಕೊಂಡು ನೋಡುವೆನೆನ್ನ ಸಾಮರ್ಥ್ಯದ ಸಘಾಡದಲಿ
ಚಂಡಿಯಾದೆನು ತಾನೆನುತ ಖತಿ
ಗೊಂಡು ಮರಳಿತು ಸರ್ಪಶರವಾ
ಖಂಡಳಾತ್ಮಜನತ್ತ ಹಾಳಾಹಳದ ಚೂಣಿಯಲಿ ೪೩

ಇವನ ಬಲ್ಲೈ ಪಾರ್ಥ ಚಕ್ಷು
ಶ್ರವನಿವನು ತಕ್ಷಕನ ಮಗ ಖಾಂ
ಡವದ ಬೇಳಂಬದಲಿ ಬದುಕಿದ ತಲೆಯೊಳಡಹಾಯ್ದು
ಇವನ ಮೂಡಿಗೆಯೊಳಗೆ ಶರವಾ
ಯ್ತಿವನು ತಾನೇ ಮರಳಿದನು ನೀ
ನವಧರಿಸಿಕೊಳ್ಳೆನುತ ನುಡಿದನು ದೈತ್ಯರಿಪು ನಗುತ ೪೪

ಅರಸ ಕೇಳೈ ಕರ್ಣಶಕ್ತಿ
ಸ್ಫುರಣಸಹಿತೀ ಬಾಣವತಿ ದು
ರ್ಧರವದಲ್ಲದೆ ಬರಿಯ ವಿಷದುಬ್ಬರದ ಸಾಹಸವ
ನರನಲೇ ಕೈಕೊಳ್ಳದೀ ಬಹ
ಸರಳನೈದಂಬುಗಳಲೆಡೆಯಲಿ
ತರಿದು ಬಿಸುಟನು ವೀರನಾರಾಯಣನ ನೇಮದಲಿ ೪೫

ಇಪ್ಪತ್ತಾರನೆಯ ಸಂಧಿ

ಸೂ. ಚಂಡ ಭುಜಬಲ ವಿಕ್ರಮನ ಮಾ
ರ್ತಂಡತನಯನ ವಿಜಯಸಿರಿ ಮುಂ
ಕೊಂಡು ಮನ್ನಿಸಿ ಭುಜಕೆ ಬಂದಳು ಕಲಿ ಧನಂಜಯನ

ಕೇಳು ಧೃತರಾಷ್ಟ್ರಾವನಿಪ ನಿ
ನ್ನಾಳ ಜಯಸಿರಿ ಸರ್ಪಬಾಣದ
ಮೇಳೆಯದ ಸೀಮೆಯಲಿ ನಿಂದುದು ಹಲವು ಮಾತೇನು
ಹೇಳಿ ಫಲವೇನಿನ್ನು ಮುಂದಣ
ಕಾಳೆಗದ ಕರ್ಣಾಮೃತದ ಮಳೆ
ಗಾಲ ಮಾದು ವಿಲೋಚನದ ಮಳೆಗಾಲವಾಯ್ತೆಂದ ೧

ಕಳಿದ ಹೂವಿನ ಪರಿಮಳವೊ ಧರೆ
ಗಿಳಿದ ಸೂರ್ಯಪ್ರಭೆಯೊ ಶರದದ
ಹೊಳೆಯೊ ಮೇಘಸ್ಥಿತಿಯೊ ಸುರಪತಿ ಚಾಪ ವಿಭ್ರಮವೊ
ಇಳಿವ ಜವ್ವನದೊಲುಮೆಯೋ ಕುರು
ಬಲವ ಕಂಡೆನು ಜೀಯ ಜಯದ
ಗ್ಗಳಿಕೆಗಳ ಜಾರುಗಳ ನಿನ್ನ ಕುಮಾರನೊಡ್ಡಿನಲಿ ೨

ಆಗಳಳಿದುದು ಸರ್ಪಶರ ತಾ
ನಾಗಳೇ ಕುರುರಾಯ ಭುಜವನು
ನೀಗಿದಳು ಜಯವಧು-ಧರಾವಧು ಭಾಗ್ಯವಧು ಸಹಿತ
ಆಗಳೇ ಬಿನ್ನೈಸೆನೇ ರಣ
ದಾಗುಹೋಗಿನ ಹೊರಿಗೆಯನು ತಾ
ನೀಗಿ ಬಿಸುಟನು ತನ್ನ ಸತ್ಯಸ್ಥಿತಿಗೆ ಕಲಿಕರ್ಣ ೩

ಆದರೇನದು ಮತ್ತೆ ಕರ್ಣನ
ಕೈದುಕಾರತನಕ್ಕೆ ಸುಭಟರು
ಮೇದಿನಿಯೊಳಾರುಂಟು ಪಡಿ ದೈವಾಭಿಮುಖವುಳಿಯೆ
ಹೋದೆ ಹೋಗಿನ್ನೆನುತ ಕಣೆಗಳ
ಸಾದುಗಳ ತನಿವೀರರಸದಲಿ
ತೇದು ಚಿತ್ರವ ಬರೆದನರ್ಜುನನಂಗಭಿತ್ತಿಯಲಿ ೪

ಮತ್ತೆ ಕೃಷ್ಣನನೆಚ್ಚು ಹನುಮನ
ತೆತ್ತಿಸಿದ ಕೂರಂಬಿನಲಿ ಕೈ
ವರ್ತಿಸಿದನೀರೆಂಟು ಶರವನು ತುರಗದೇಹದಲಿ
ಹೊತ್ತಿದುದು ಕಡುಗೋಪ ವಹ್ನಿಯೊ
ಳಿತ್ತಲಿದೆ ನಿಲ್ಲೆನುತ ಪಾರ್ಥನ
ಮೆತ್ತಿ ನೂರಂಬಿನಲಿ ಪುನರಪಿ ಕಪಿಯನೊಡೆಯೆಚ್ಚ ೫

ನೆಲನ ಬೇಟದ ಬೇಗೆಗೋಸುಗ
ರಳಿವರಿವದಿರು ಪಾಂಡುನಂದನ
ರಳಿಯಲವದಿರ ಬಳಿಯ ವೇಳಾಯಿತನು ಕೃಷ್ಣ ಗಡ
ಅಳಿಯಲಥವಾ ನಿಲಲಿ ಹಣುಹಂ
ಪಲು ಮೆಲಿದು ನೀನಿವರ ಬಲೆಯಲಿ
ಸಿಲುಕಿ ನೊಂದೈ ತಂದೆ ಪವನಜ ಎಂದನಾ ಕರ್ಣ ೬

ಬಾಯಿಬಡಿಕನಲಾ ವೃಥಾ ರಾ
ಧೇಯ ಮದವೇಕಿನ್ನು ನಿನಗಹಿ
ಸಾಯಕದ ಸಾವಿನಲಿ ನೀರಿಳಿಸುವೆನು ನೆತ್ತರಲಿ
ತಾಯ ಬಸುರಿಂಬಿಲ್ಲ ನೀನುಳಿ
ವಾಯತಿಕೆಯಿನ್ನೆಂತು ಕೌರವ
ರಾಯ ನೋಡಲಿ ಕರೆಯೆನುತ ತೆಗೆದೆಚ್ಚನಾ ಪಾರ್ಥ ೭

ಆರು ಶರದಿಂದೆಚ್ಚು ಮಗುಳೀ
ರಾರುಬಾಣದಲೌಕಿ ಮೂವ
ತ್ತಾರು ಮಾರ್ಗಣದಿಂದ ಮುಕ್ಕುರಿಕಿದನು ರಿಪುಭಟನ
ಮೂರುಬಾಣದಲರಿಯ ದೇಹವ
ಕೀರಿದನು ಮತ್ತೆರಡುಶರದಲಿ
ಜಾರಲೆಚ್ಚನು ಜರೆದು ಕರ್ಣನ ಕರ್ಣಕುಂಡಲವ ೮

ಜೋಡ ಕಡಿದನು ಸೀಸಕವನೀ
ಡಾಡಿದನು ಕೆಲಬಲದ ಕಣೆಗಳ
ನೀಡುಕಾರರನಿಕ್ಕಿದನು ಗರಿಸಹಿತ ಸರಳುಗಿಯೆ
ಹೂಡಿದಂಬಿನ ಹೊದೆಯ ಬಂಡಿಯ
ತೋಡ ಕಡಿದನು ಛತ್ರ ಚಮರದ
ಝಾಡಿಗಳ ತರಿದೊಟ್ಟಿದನು ಕಲಿಪಾರ್ಥ ನಿಮಿಷದಲಿ ೯

ಈತನಬ್ಬುಡಿಸುವನೆ ಬಳಿಕಿನೊ
ಳಾ ತತುಕ್ಷಣವರ್ಜುನನ ಚಮು
ರಾತಪತ್ರವ್ಯೂಹವನು ಕೈದುಗಳ ಬಂಡಿಗಳ
ಘಾತಿಸಿದನೆಡಬಲದ ಸುಭಟ
ವ್ರಾತವನು ಕೆದರಿದನು ಸರಳ ವಿ
ಘಾತಿಯಲಿ ಬಲುಘಾಯವಡೆದನು ಪಾರ್ಥನಡಿಗಡಿಗೆ ೧೦

ಅರಸ ಹೇಳುವುದೇನು ರಾಯನ
ಸಿರಿಯ ಪೈಸರವನು ಸುಯೋಧನ
ನರಸುತನದಾಧಾರ ಮೂಲಸ್ತಂಭ ಭಂಜನವ
ನರನ ಜಯವೆಲ್ಲಿಯದು ದೈವವ
ಮರುಳುಮಾಡಿದರವರು ನಿಮ್ಮಯ
ಧರಣಿ ನಿಮಗನುಚಿತವ ನೆನೆದಳು ಹೇಳಲೇನೆಂದ ೧೧

ಧರೆ ನೆನೆದ ದುಷ್ಕೃತವದೇನೆಂ
ದರಸ ಬೆಸಗೊಂಬೈ ನಿರಂತರ
ಸುರಿವ ರುಧಿರಾಸಾರದಲಿ ಕೆಸರೆದ್ದ ಕಳನೊಳಗೆ
ಹರಿವ ಬಿಂಕದ ರಥದ ಗಾಲಿಯ
ಗರುವತನ ಗಾಳಾಯ್ತಲೇ ಖೊ
ಪ್ಪರಿಸಿ ತಗ್ಗಿತು ತೇರು-ತಡೆದುದು ಭಟನ ಸಾಹಸವ ೧೨

ಗಾಲಿಯದ್ದವು ಕೂಡೆ ಯಂತ್ರದ
ಕೀಲುಗಳು ಕಳಚಿದವು ಹಯತತಿ
ತೂಳಿ ಸತ್ವದಲೌಕಿ ಸೆಳೆದವು ಕುಸಿದು ನಿಜಮುಖವ
ಮೇಲು ಮಿಡುಕದು ತೇರು ಕುರುಬಲ
ಜಾಲ ಜರಿದುದು ವೈರಿ ಬಲದಲಿ
ಸೂಳವಿಸಿದರು ಭುಜವನೊದರಿತು ಬೆರಳ ಬಾಯ್ಗಳಲಿ ೧೩

ಮೂಗಿನಲಿ ಬೆರಳಿಟ್ಟು ಮಕುಟವ
ತೂಗಿ ತೊನೆದನು ಪೂತು ಮಝು ನಿ
ರ್ಭಾಗಧೇಯನು ರಾಯನಕಟಾ ಶಿವ ಮಹಾದೇವ
ಈಗಳಿದು ತಾನೇನು ವಿಧಿ ಬರೆ
ದೋಗಟೆಯೊ ಕುರುವಂಶ ವಜ್ರದ
ಬೇಗಡೆಯೊ ಮಾಮಾ ಎನುತ ಮರುಗಿದನು ಕಲಿಕರ್ಣ ೧೪

ಶಿವನ ಬಲುಹುಂಟೆಂಬೆನೇ ಶಿವ
ನವರ ಕಡೆ ಹರಿಯೆಂಬೆನೇ ಪಾಂ
ಡವರ ಬಂಡಿಯ ಬೋವನಿಂದ್ರಾದ್ಯರು ಸಹಾಯಿಗಳು
ಅವರು ಸಾಕ್ಷಾತರ್ಜುನರು ನ
ಮ್ಮವನಿ ನವಗುಂಟೆಂಬೆನೇ ಕೌ
ರವನ ಪುಣ್ಯವನರಿಯೆನಿದು ಹದನೆಂದನಾ ಕರ್ಣ ೧೫

ಇಳುಹಿದನು ರಥದೊಳಗೆ ಚಾಪವ
ನಳವಡಿಸಿದನು ಸೆರಗನಲ್ಲಿಂ
ದಿಳಿದು ಗಾಲಿಯನಲುಗಿ ಪಾರ್ಥನ ನೋಡಿ ನಸುನಗುತ
ಎಲೆ ಧನಂಜಯ ಸೈರಿಸುವುದರೆ
ಗಳಿಗೆಯನು ರಥವೆತ್ತಿ ನಿನಗಾ
ನಳವಿಗೊಡುವೆನು ತನ್ನ ಪರಿಯನು ಬಳಿಕ ನೋಡೆಂದ ೧೬

ರೂಢಿಸಿದ ಭಟ ನೀನು ಪಂಥದ
ಪಾಡುಗಳ ಬಲ್ಲವನು ಶಾಸ್ತ್ರವ
ಖೋಡಿಗಳೆವವನಲ್ಲ ಲೌಕಿಕ ವೈದಿಕ ಸ್ಥಿತಿಯ
ನಾಡೆ ಬಲ್ಲಿರಿ ಶಸ್ತ್ರಹೀನರ
ಕೂಡೆ ವಾಹನಹೀನರಲಿ ಕೈ
ಮಾಡಲನುಚಿತವೆಂಬ ಮಾರ್ಗವನೆಂದನಾ ಕರ್ಣ ೧೭

ಎನುತ ಗಾಲಿಯನಲುಗಿ ಕೀಲ
ಚ್ಚಿನಲಿ ಮುಂಗೈಗೊಟ್ಟು ಮೊಳಕಾ
ಲಿನಲಿ ಧರಣಿಯನೌಕಿ ತಗ್ಗಿದ ರಥವ ನೆಗಹುತಿರೆ
ದನುಜರಿಪು ಚಮ್ಮಟಿಗೆಯಲಿ ಫಲು
ಗುಣನ ತಿವಿದನು ನೋಡು ರಾಧಾ
ತನುಜನಿರವನು ಬೇಗಮಾಡೆಂದರ್ಜುನನ ಜರೆದ ೧೮

ಎಸು ಮರುಳೆ ಗಾಂಡೀವಿಯಾಪ
ತ್ತೈಸಗಿದಾಗಳೆ ಹಗೆಯ ಗೆಲುವುದು
ವಸುಮತೀಶರ ನೀತಿ ತೊಡು ತೊಡು ದಿವ್ಯಮಾರ್ಗಣವ
ವಿಷಮವೀರನು ರಥವ ಮೇಳಾ
ಪಿಸದ ಮುನ್ನವೆ ಹರಿವ ನೆನೆ ಸೈ
ರಿಸಿದ ಬಳಿಕೀ ಕರ್ಣ ಕೈಕೊಂಬನೆ ತ್ರಿಯಂಬಕನ ೧೯

ಏನನೆಂಬೆನು ಜೀಯ ಕರ್ಣಂ
ಗೇನಹನೊ ಫಲುಗುಣನು ಬಳಿಕಾ
ದಾನವಾರಿಯ ನುಡಿಯ ಕೇಳಿದು ಕೇಳಿವಾಕ್ಷಣಕೆ
ಗ್ಲಾನಿಯಲಿ ಮುಳುಗಿದನು ಮನದಭಿ
ಮಾನ ಸರ್ಪನ ಕೆಡಹಿ ಧೈರ್ಯನಿ
ಧಾನವನು ಕೈಸೂರೆಗೊಂಡುದು ಶೋಕವರ್ಜುನನ ೨೦

ಮುಕ್ಕಿದನು ಮಹಿಮೆಯನು ಕಂಗಳು
ಮುಕ್ಕುಳಿಸಿದವು ನೀರನಹಿತನೊ
ಳುಕ್ಕುವನುರಾಗದಲಿ ಕೊಂಡನು ಬಳಿಕ ವೀಳೆಯವ
ಸಿಕ್ಕಿದನು ಕರುಣಾಲತಾಂಗಿಯ
ತೆಕ್ಕೆಯಲಿ ನಾನೇನ ಹೇಳುವೆ
ನೊಕ್ಕಲಿಕ್ಕಿತು ಶೋಕವರ್ಜುನನಂತರಂಗದಲಿ ೨೧

ತೇರಿನಲಿ ಚಾಚಿದನು ಮೆಲ್ಲನೆ
ಭಾರಿ ಧನುವನು ಕಯ್ಯ ಕಣೆಗಳ
ನೋರೆಯಲಿ ಸೈತಿರಿಸಿ ಕಂಡನು ಮತ್ತೆ ಮುರವೈರಿ
ಹಾರವೇಕೈ ಕಂಗಳಲಿ ಕ
ಸ್ತೂರಿಯೇಕೈ ಕದಪಿನಲಿ ಶೃಂ
ಗಾರವಿದು ವಿಪರೀತವೇನೈ ಪಾರ್ಥ ಹೇಳೆಂದ ೨೨

ದೇವ ಹಗೆಯಾಗಿರನು ಕರ್ಣನಿ
ದಾವ ಹದನೆಂದರಿಯೆ ಮನದಲಿ
ನೋವು ಮಿಗುವುದು ಕೈಗಳೇಳವು ತುಡುಕುವಡೆ ಧನುವ
ಜೀವವೀತನಮೇಲೆ ಕರಗುವು
ದಾವ ಸಖನೋ ಶತ್ರುವೆಂಬೀ
ಭಾವನೆಯ ಬಗೆ ಬೀಳುಕೊಂಡುದು ಕರ್ಣನಾರೆಂದ ೨೩

ಕೌರವನ ಮೇಲಿಲ್ಲದಗ್ಗದ
ವೈರವೀತನಮೇಲೆ ನಮಗಪ
ಕಾರಿಯೀತನು ಮರಣದನುಸಂಧಾನವಿನ್ನೆಬರ
ವೈರವುಪಶಮಿಸಿತು ಯುಧಿಷ್ಠಿರ
ವೀರನಿಂದಿಮ್ಮಡಿಯ ನೇಹದ
ಭಾರವಣೆ ತೋರುವುದಿದೇನೈ ಕರ್ಣನಾರೆಂದ ೨೪

ಆಸುರದ ವ್ಯಾಮೋಹವಿದು ಡೊ
ಳ್ಳಾಸವೋ ಕೌರವರ ಘಟ್ಟಿನ
ವೈಸಿಕವೊ ನಿಮ್ಮಡಿಯ ಮಾಯಾಮಯದ ಮಾಲೆಗಳೊ
ವಾಸಿ ಬೀತುದು ಛಲಗಿಲದ ಕಾ
ಳಾಸ ಸೋತುದು ಕರ್ಣನಲಿ ಹಿರಿ
ದಾಸೆಯಾಯಿತು ಕೃಷ್ಣ ಕರ್ರುಣಿಸು ಕರ್ಣನಾರೆಂದ ೨೫

ಕಾಲಯವನನುಪಾಯದಿಂದವೆ
ಬೀಳಿಸಿದೆ ಮಾಗಧನನಾ ಪರಿ
ಸೀಳಿಸಿದೆ ಭೀಷ್ಮಾದಿಗಳ ಸೋಲಿಸಿದೆ ಸಾಮದಲಿ
ಡಾಳನತಿ ಡೊಂಕಣಿಯು ಠಕ್ಕಿನ
ಠೌಳಿಕಾರನು ನಿನ್ನ ಮಾಯೆಯ
ಹೇಳಲಮ್ಮೆನು ಕೃಷ್ಣ ಕರುಣಿಸು ಕರ್ಣನಾರೆಂದ ೨೬

ಋಷಿಗಳನುಮತದಿಂದ ಕುಂತಿಯು
ಬಸುರಲೇನುದಯಿಸನಲೆ ನೀ
ನಸುರರಿಪು ಬಹು ಕಪಟನಾಟಕ ಸೂತ್ರಧಾರನಲೆ
ವಸುಮತಿಯ ಭಾರವನು ಸಲೆ ಹಿಂ
ಗಿಸುವ ಕೃತ್ಯವು ನಿನ್ನದೆನಗು
ಬ್ಬಸವಿದೇನೆಂದರಿಯೆನಕಟಾ ಕರ್ಣನಾರೆಂದ ೨೭

ಧರೆಯ ಬಿಡುವೆವು ಕುರುಪತಿಗೆ ನಾ
ವರುವರೊಡವುಟ್ಟಿದರು ವಿಪಿನಾಂ
ತರದೊಳಗೆ ಭಜಿಸುವೆವು ನಿನ್ನನು ಭಾವಶುದ್ಧಿಯಲಿ
ತೆರಳುವೀ ಸಿರಿಗೋಸುಗರ ಸೋ
ದರನ ಕೊಲುವೆನೆ ಕೃಷ್ಣ ಕರುಣಿಸು
ಕರುಣಿಸಕಟಾ ಕೃಷ್ಣ ಕರುಣಿಸು ಕರ್ಣನಾರೆಂದ ೨೮

ದೂರುವವರಾವಲ್ಲ ಕರುಣವ
ತೋರಿ ಬಿನ್ನಹಮಾಡಿದೆನು ಹಗೆ
ಯೇರದಿವನಲಿ ಸೇರುವುದು ಸೋದರರದ ಸಂಬಂಧ
ಆರೆನೀತನ ಕೊಲೆಗೆ ಹೃದಯುವ
ಸೂರೆಗೊಂಡನು ಕರ್ಣನಕಟಾ
ತೋರಿ ನುಡಿಯಾ ಕೃಷ್ಣ ಕರುಣಿಸು ಕರ್ಣನಾರೆಂದ ೨೯

ಅರಸ ಕೇಳ್ಬೈ ಬಳಿಕ ಪಾರ್ಥನ
ಕರುಣರಸದಾಳಾಪ ವಾಗ್ವಿ
ಸ್ತರಕೆ ಮನದಲಿ ಮರುಗಿದನು ಮುರವೈರಿ ನಸುನಗುತ
ಕೆರಳಿದನು ಮಾತಿನಲಿ ಸುಡು ಬಾ
ಹಿರನಲಾ ನೀ ನಿನ್ನ ವಂಶಕೆ
ಸರಿಯೆ ಸೂತನ ಮಗನಿದೇನೆಂದಸುರರಿಪು ಜರೆದ ೩೦

ವಾಸಿಗಾದುದೆ ಜಾತಿಸಂಕರ
ಬೇಸರಾಯಿತೆ ಧೃತಿಗೆ ಕಲಿತನ
ಕೀಸು ಮೊಲೆಗಳು ಮೂಡಿದವಲಾ ಪಾರ್ಥ ಸಮರದಲಿ
ಹೂಸಕದ ಛಲವೀಯಹಂಕೃತಿ
ಮೀಸಲಳಿದುದೆ ಶಿವಶಿವಾ ನಿ
ರ್ದೋಷದಲಿ ಬಹುದೋಷವಿದು ವಿಪರೀತವಾಯ್ತೆಂದ ೩೧

ಕ್ಷಿತಿಯೊಳೀ ಕ್ಷತ್ರಿಯರ ಧರ್ಮ
ಸ್ಥಿತಿಯನರಿಯಾ ಕೃಷ್ಣ ಚಾಪ
ಚ್ಯುತರನಪಗತವಾಹನರ ಪರಿಮುಕ್ತ ಕೇಶಿಗಳ
ಗತಿವಿಹೀನರ ದೈನ್ಯವಾಚಾ
ಯುತರ ತರು ವಲ್ಮೀಕ ಜಲ ಸಂ
ಗತರನಿರಿವುದು ಧರ್ಮವೇ ನಾವರಿಯೆವಿದನೆಂದ ೩೨

ಹೇಳು ಹೇಳಿನ್ನೊಮ್ಮೆ ಧರ್ಮವ
ಕೇಳಿದರಿಯೆವು ನಿಮ್ಮ ಕಯ್ಯಲಿ
ಕೇಳಲಾಗದೆ ರಾಜಧರ್ಮ ಪುರಾಣ ಸಂಗತಿಯ
ಆಳಿವನಘಾಟವೆ ದೊತಾರಿಸಿ
ಸೋಲಿಸುವುದೇನರಿದೆ ಬಲುಗೈ
ಯಾಳಲಾ ನೀ ರಣಕೆ ದಿಟ ವಸುದೇವನಾಣೆಂದ ೩೩

ಈಗಲೀ ಧರ್ಮಶ್ರವಣ ನೀ
ನಾಗಳೇರಿಸಿ ನುಡಿದ ಭಾಷೆಗೆ
ಮೂಗುಹೋದುದೆ ಮರೆದಲಾ ಮಾತುಗಳು ಹಳಸುವವೆ
ಹೋಗಲೆಲೆ ಮರುಳೇ ವಿಭಾಡಿಸು
ಬೇಗದಲಿ ಬಹುರಾಜಕಾರ್ಯವ
ನೀಗಳೇ ತಿದ್ದುವೆನು ತೊಲಗಿಸು ಸೂತಜನ ಶಿರವ ೩೪

ಅಕಟ ನಿಷ್ಕರುಣಿಯೆ ವೃಥಾ ಪಾ
ತಕವಿದೇಕೈ ಹೇಳು ಜಯಕಾ
ಮುಕರು ನಾವೊಲ್ಲದಡೆ ನಿಮಗೇಕೀಸು ನಿರ್ಬಂಧ
ಪ್ರಕಟ ಕುರುವಂಶದಲಿ ಯದುರಾ
ಜಕರೊಡನೆ ಹಗೆಯಿಲ್ಲಲೇ ಮತಿ
ವಿಕಳನಾದೆನು ಕೃಷ್ಣ ಕರ್ಣನ ಕೊಲುವನಲ್ಲೆಂದ ೩೫

ಬಿಸುಟು ಹೋದನು ರಥವ ಸಾರಥಿ
ವಸುಂಧೆಯಲಿ ರಥವದ್ದು ಕೆಡೆದುದು
ನಿಶಿತಮಾರ್ಗಣವಿಲ್ಲ ಕಯ್ಯಲಿ ದಿವ್ಯಧನುವಿಲ್ಲ
ಎಸುವಡೆಂತೇಳುವುವು ಕಯ್ ನೀ
ಬೆಸಸುವಡೆ ಮನವೆಂತು ಬಂದುದು
ಬಸುರ ಶಿಖಿ ಬಲುಹಾಯ್ತು ಕರ್ಣನ ಕೊಲುವನಲ್ಲೆಂದ ೩೬

ಗುರುವನೆಸುವಡೆ ಮೇಣು ಭೀಷ್ಮನ
ಸರಳ ತಡಿಕೆಗೆ ಚಾಚುವಡೆ ಧಿ
ಕ್ಕರಿಸುವಡೆ ಕೃಪ ಶಲ್ಯ ಸೈಂಧವ ಮುಖ್ಯ ಬಾಂಧವರ
ತೆರಳಿದೆನೆ ತೇರೈಸಿದೆನೆ ಹೇ
ವರಿಸಿದೆನೆ ಹೋರಿದೆನೆ ಕಲಿತನ
ಕರಗಿತೇನೆಂದರಿಯೆ ಕರ್ಣನ ಕೊಲುವನಲ್ಲೆಂದ ೩೭

ಬಳಿಕ ಭೀಮಾದಿಗಳ ಮನದಲಿ
ಸುಳಿದುದೈ ಸಂದೇಹವೀತನ
ಕೊಲುವುದೇನನುಚಿತವೊ ಮೇಣುಚಿತವೋ ಶಿವಾ ಎನುತ
ಅಳುಕಿದರು ದ್ರೌಪದಿ ಯುಧಿಷ್ಠಿರ
ರೊಳಗೊಳಗೆ ಸಂತಾಪಶಿಖಿಯಲಿ
ತಳಿತ ದುಗುಡದ ಬಿಗಿದ ಬೆರಗಿನೊಳಿದ್ದುದಾಚೆಯಲಿ ೩೮

ಮೊದಲಲೆರಡೊಡ್ಡಿನಲಿ ಸುಮ್ಮಾ
ನದ ಸಘಾಡವ ಕಂಡೆನೀಗಳು
ತುದಿಗೆ ಬರೆವರೆ ಕಂಡೆನಿವರವರೆರಡು ಥಟ್ಟಿನಲಿ
ತುದಿವೆರಳ ಕಂಬನಿಯ ಬಳಸಿದ
ಬೆದರುಗಳ ಕಂಕ್ಕುಳಿಸಿದುತ್ಸಾ
ಹದ ವಿಘಾತಿಯ ನಟ್ಟ ಚಿಂತೆಯನರಸ ಕೇಳೆಂದ ೩೯

ಮತ್ತೆ ಜರೆದನು ದನುಜರಿಪು ತಲೆ
ಗುತ್ತಿದನು ಕಲಿ ಪಾರ್ಥನಾತನ
ಕುತ್ತಿ ಬರಸೆಳೆದಂತೆ ಭಂಗಿಸಿದನು ಮುರಧ್ವಂಸಿ
ಒತ್ತೊವವು ಫಲುಗುಣನ ನುಡಿ ಮಿಂಗೆ
ಕೆತ್ತೊವವು ಹರಿವಚನವಾತನ
ಚಿತ್ತವನು ಸಂತೈಸಿ ಹರಿ ತಿಳುಹಿದನು ಸಾಮದಲಿ ೪೦

ಎಲೆ ಧನಂಜಯ ನೀನು ಹಿಮಕರ
ಕುಲದ ಸುಕುಮಾರಕನು ಲೋಕದ
ಕುಲವಿಹೀನನು ಕರ್ಣನಿವ ನಿನಗೆಂತು ಸರಿಯಹನು
ತಲೆಯ ಮಾರಿ ಶರೀರವನು ಸಲೆ
ಸಲಹಲೋಸುಗ ಕೌರವನ ತಂ
ಬುಲಕೆ ಕಯ್ಯಾಂತವನು ಬಂಧುವೆ ಪಾರ್ಥ ಹೇಳೆಂದ ೪೧

ಕೇಡಹೊತ್ತಿಸಿ ನಿಮ್ಮ ಬೇಂಟೆಯ
ನಾಡಿಸಿದನಿವ ಜೂಜನಾಡಿಸಿ
ನಾಡ ಕೊಳಿಸಿದ ಹಿಸುಣನಿವ ನಿಮ್ಮೆಲ್ಲರನು ಕೆಡಿಸಿ
ನಾಡ ಸಂಧಾನವನು ನಾವ್ ಮಾ
ತಾಡಲೆಮ್ಮನು ಬಿಗಿಯಲನುವನು
ಮಾಡಿಸಿದನೀ ಕರ್ಣ ನಿಮಗತಿಹಿತವನಹನೆಂದ ೪೨

ಕೊಲ್ಲನೇ ಅಭಿಮನ್ಯುವನು ಹಗೆ
ಯಲ್ಲವೇ ಮಾರುತಿಯ ಕೊರಳನು
ಬಿಲ್ಲ ಕೊಪ್ಪಿನೊಳೆಳೆಯನೇ ಕೆಡೆಯೆಸನೆ ಧರ್ಮಜನ
ಖುಲ್ಲನೀತಿಯ ನೆನೆಯದಿರು ನೀ
ನೆಲ್ಲಿಯವನೀ ವೈರಿ ಕರ್ಣನ
ದೆಲ್ಲಿಯವನೆಸು ಮರುಳೆ ಎಂದನು ನಿಜವ ತೋರಿಸದೆ ೪೩

ಬೀಸಿದನು ನಿಜ ಮಾಯೆಯನು ಡೊ
ಳ್ಳಾಸದಲಿ ಹರಹಿದನು ತನುವನು
ರೋಷವನ ಬಿತ್ತಿದನು ಮನದಲಿ ನರನ ಕಲಿಮಾಡಿ
ಐಸೆ ಬಳಿಕೇನೆನ್ನ ಖಿಳಗುಣ
ದೋಷ ನಿನ್ನದು ಪುಣ್ಯಪಾಪದ
ವಾಸಿ ನಮಗೇಕೆನುತ ಕೊಂಡನು ಧನುವನಾ ಪಾರ್ಥ ೪೪

ಹಿಡಿ ಧನುವನನುವಾಗು ಸಾಕಿ
ನ್ನೆಡಬಲನ ಹಾರದಿರೆನುತ ಕಯ್
ಗಡಿಯನೆಚ್ಚನು ನೂರು ಶರದಲಿ ಸೂತನಂದನನ
ತೊಡಗಿತೇ ಕಕ್ಕುಲಿತೆ ಮನದಲಿ
ಘಡ ಎನುತ ನೂರಂಬನೆಡೆಯಲಿ
ಕಡಿದು ಬಿಸುಟನು ಸೆಳೆದು ಕಿಗ್ಗಟ್ಟಿನ ಕಠಾರಿಯಲಿ ೪೫

ರಥವ ಸಂತೈಸಿದನು ಬಳಿಕತಿ
ರಥ ಭಯಂಕರನೇರಿದನು ನಿಜ
ರಥವನತಿಹರುಷದಲಿ ತೊಳೆದನು ಚರಣ ಕರತಳವ
ಪೃಥಿವಿ ನೆನೆದಪಕಾರ ಲೋಕ
ಪ್ರಥಿತವಾಯಿತು ಸಾಕು ಬದುಕಲಿ
ಪೃಥೆಯ ಮಕ್ಕಳೆನುತ್ತ ಕೊಂಡನು ನಗುತ ವೀಳೆಯವ ೪೬

ಧನುವ ಕೊಂಡನು ಹಯವ ಜರೆದ
ರ್ಜುನನ ತರುಬಿದನಖಿಳ ಕುರುಬಲ
ವನಧಿಗಭಯವನಿತ್ತು ಮುಸುಕಿದನಂಬಿನಲಿ ನರನ
ಕನಲಿದವು ನಿಸ್ಸಾಳ ರಿಪುನೃಪ
ಜನವ ಬಯ್ದವು ಕಹಳೆ ಬಹುವಿಧ
ನಿನದದಲಿ ಗರ್ಜಿಸಿದವೆರಡೊಡ್ಡಿನಲಿ ಘನವಾದ್ಯ ೪೭

ಅಳುಕಿದನೆ ರಥ ಮುಗ್ಗಿದರೆ ಕಳ
ವಳಿಸಿದನೆ ಶಲ್ಯಾಪಸರಣಕೆ
ಕೆಲಬಲನ ಹಾರಿದನೆ ನರನವಗಡಿಸಿ ಕಾದಿದಡೆ
ಬಲಿಮಥನ ಮಝು ಭಾಪು ಪಾಂಡವ
ಬಲದಿಶಾಪಟ ರಾಯಮದನ
ಪ್ರಳಯಹರ ಭಾಪೆಂದು ಹೊಗಳಿತು ವಂದಿಸಂದೋಹ ೪೮

ಅರಸ ಕೇಳ್ಳೆ ಜೂಜುಗಾರರ
ಸಿರಿಯ ಸಡಗರ ಕಳಿವಗಲ ತಾ
ವರೆಯ ನಗೆ ಸಜ್ಜನರ ಖಾತಿ ನಿತಂಬಿನೀ ಸ್ನೇಹ
ಪರಮಯೋಗಿಯ ಲೀಲೆ ಕೌರವ
ರರಸನೊಡ್ಡಿನ ಜಯವಿದೀಸರ
ಗರುಡಿಯೊಂದೇ ಶ್ರಮವ ಕೊಡುವುದು ಶಕ್ರಧನುವೆಂದ ೪೯

ಉಬ್ಬಿದನು ನಿನ್ನಾತನಾತನ
ತುಬ್ಬಿನಲಿ ಕುರುಬಲದ ಹರುಷದ
ಜಬ್ಬುರಿಯ ಹುರಿಗೂಡಿ ತೋರಿತು ಚಾರು ಚತುರಂಗ
ತೆಬ್ಬಿ ತುಳುಕುವ ಕಣೆಯ ಕಣೆಯಲಿ
ಹಬ್ಬಿ ಹರೆದುದು ತೋರದಲಿ ಬಲಿ
ದುಬ್ಬುಗವಳದ ಕಣ್ಣುಗಳು ಕರ್ಣಾವಸಾನದಲಿ ೫೦

ಹತ್ತು ಶರದಲಿ ತುರಗವನು ಮೂ
ವತ್ತರಲಿ ಮುರವೈರಿಯನು ತೊಂ
ಬತ್ತರಲಿ ಫಲುಗುಣನನೈವತ್ತಂಬಿನಲಿ ಕಪಿಯು
ಮತ್ತೆ ಮೂವತ್ತರಲಿ ಮಗುಳರು
ವತ್ತರಲಿ ನರರಥವ ನೂರೈ
ವತ್ತು ಶರದಲಿ ಘಾಯಗಾಣಿಸಿದನು ಚತುರ್ಬಲವ ೫೧

ಬಲಜಲಧಿ ಸುಳಿಗೊಂಡು ಪಾರ್ಥನ
ಬಳಿಗೆ ತೆಗೆದುದು ತೆಗೆದುದೀತನ
ಕಲಿತನದ ವಿಕ್ರಮ ಧನಂಜಯನಾ ಧನಂಜಯನ
ಅಳುಕಿದರು ಭೀಮಾದಿಗಳು ತ
ಲ್ಲಳಿಸಿತಾಚೆಯ ಥಟ್ಟು ಕೌರವ
ದಳದ ಕಳಕಳ ಕೆಟ್ಟುದೊಂದರೆಗಳಿಗೆ ಮಾತ್ರದಲಿ ೫೨

ಇಪ್ಪತ್ತೇಳನೆಯ ಸಂಧಿ

ಸೂ. ಸಮರ ಸಾಹಸ ವೀರನನುಪಮ
ಕಮಲಸಖನ ಕುಮಾರನದಟಂ
ದಮರನಗರಿಗೆ ನಡೆಯೆ ಹಲುಬಿದ ಕೌರವರ ರಾಯ

ಸಾಲದೇ ಕಥೆಯಿನ್ನು ಮೇಲಣ
ಕಾಳೆಗದ ಮಾತುಗಳನಕಟಾ
ಕೇಳಿ ಜೀವವ ಹಿಡಿಯಲಾಪೈ ತಂದೆ ಧೃತರಾಷ್ಟ್ರ
ಹೇಳುವಡೆ ಕರ್ಣವ್ಯಥೆಯ ಸಂ
ಭಾಳಿಸುವಡೆನಗರಿದು ನುಡಿಗಳ
ಕಾಳಕೂಟವ ಬಡಿಸುವೆನು ಕಿವಿಯಾರೆ ಸವಿಯೆಂದ ೧

ತೂಳಿದನು ಕಲಿಪಾರ್ಥನೀತನ
ಮೇಲೆ ಶಿವಶಿವ ಕಣೆಯ ಕಡೆವಳೆ
ಗಾಲ ತಪ್ಪಲ್ಲೆನುತ ಕಡಿದನು ಕರ್ಣನಂಬುಗಳ
ಮೇಲೆಮೇಲೆಚ್ಚಂಬುಗಳ ಸಲೆ
ಸೀಳಿ ಕರ್ಣಧ್ವಜದ ಕಂಭದ
ಕೋಲ ಮುರಿಯೆಸಲುಡಿದು ಬಿದ್ದುದು ವರ ರಥಾಗ್ರದಲಿ ೨

ಆ ಮಹಾಧ್ವಜ ದಂಡ ಪಾತದ
ಡಾಮರದ ದಳವುಳಕೆ ಹೆದರಿತು
ಹಾ ಮಹಾದೇವೇನ ಹೇಳುವೆನೈ ಮಹೀಪತಿಯೆ
ಧೂಮಚುಂಬಿತ ಚಿತ್ರದಂತೆ ಸ
ನಾಮರಿದ್ದುದು ಸೌಬಲಾಶ್ವ
ತ್ಥಾಮ ಕೃಪ ಕೃತವರ್ಮಕಾದಿಗಳೊಂದು ನಿಮಿಷದಲಿ ೩

ಮತ್ತೆ ಕೇಳರಿವಿಕ್ರಮವ ನಭ
ಕೊತ್ತಿತೀತನ ಶೌರ್ಯವಾತನ
ನೆತ್ತರಲಿ ನಾದಿದನು ನಾನಾವಿಧ ಶರಾವಳಿಯ
ಹತ್ತು ಶರದಲಿ ಕರ್ಣಚಾಪವ
ಕತ್ತರಿಸಿದನು ಪಾರ್ಥನೀತನ
ಚಿತ್ತದಲಿ ಕರುಣಾರಸಕೆ ಕಾಲಾಟವಾಯ್ತೆಂದ ೪

ದ್ರೋಣ ಭೀಷ್ಮರ ನಚ್ಚಿದರೆ ಮುಂ
ಗಾಣಿಕೆಯಲೇ ಮಡಿದರೆನ್ನಯ
ಗೋಣ ಕೊಯ್ದನು ಕೃಷ್ಣ ಮುನ್ನಿನ ಕುಲವನೆಚ್ಚರಿಸಿ
ಪ್ರಾಣ ಪಾಂಡವರೆಂಬ ನುಡಿಯನು
ಜಾಣಿನಲಿ ಹರಿ ಬಲಿದನೊಡೆಯಗೆ
ಕಾಣೆನಾಪ್ತರನೆಂದು ಮನದಲಿ ಮರುಗಿದನು ಕರ್ಣ ೫

ಕುಲಕೆ ಕೇಳಿವನೆಂದು ಟಿಕ್ಕರಿ
ಗಳೆದಡಾ ಬಹುಬಂಧುವರ್ಗವ
ನುಳಿದು ಸಿಂಹಾಸನದಲೆನಗಭಿಷೇಕವನು ಮಾಡಿ
ಕುಲದ ಮಲಿನವ ತೊಳೆದು ಕೌರವ
ಕುಲದೊಳೊಡಬೆಚ್ಚವನಿಪಾಲಕ
ತಿಲಕ ಕುರುಪತಿಗಾಪ್ತರಿಲ್ಲೆಂದಳಲಿದನು ಕರ್ಣ ೬

ನೋಡಿ ದಣಿಯನು ನಿಚ್ಚಲುಚಿತವ
ಮಾಡಿ ದಣಿಯನು ಖೇಳ ಮೇಳದ
ಲಾಡಿ ದಣಿಯನು ಶಿವಶಿವಾ ತನ್ನೊಡನೆ ಕುರುರಾಯ
ಓಡಲರಿಯದೆ ದ್ರೋಣ ಭೀಷ್ಮರು
ಗೂಡ ತಲೆಗೊಟ್ಟೈಸರಲಿ ತಾ
ಮಾಡಿತೇನರಸಂಗೆನುತ ಮರುಗಿದನು ಕಲಿಕರ್ಣ ೭

ಮೊದಲಲಾತ್ಮಜರಳಿವನೊಡವು
ಟ್ಟಿದರ ಮೆಯ್ಯಲಿ ಮರೆದನೊಡವು
ಟ್ಟಿದರು ನೂರ್ವರು ಮಡಿಯೆ ಮರೆದನು ತನ್ನ ಸುಳಿವಿನಲಿ
ಕದನವೆನ್ನಯ ಸುಳಿವನೊಳಕೊಂ
ಡುದು ಸುಯೋಧನನೃಪತಿಗಿನ್ನಾ
ಪ್ತದರ ಕಾಣೆನು ಶಿವಶಿವಾ ಎಂದಳಲಿದನು ಕರ್ಣ ೮

ಸಲಹಿದೊಡೆಯನ ಜೋಳವಾಳಿಗೆ
ತಲೆಯ ಮಾರುವುದೊಂದು ಪುಣ್ಯದ
ಫಲವು ಮರಣದ ಹೊತ್ತು ಕೃಷ್ಣನ ಕಾಬ ಸುಕೃತಫಲ
ಇಳೆಯ ಮೇಲೆನಗಲ್ಲದಾರಿಗೆ
ಫಲಿಸುವುದು ತಾ ಧನ್ಯನೆನುತವೆ
ಹಳಚದಸುರಾಂತಕನನೀಕ್ಷಿಸುತಿರ್ದನಾ ಕರ್ಣ ೯

ಒಳಗೆ ಹೃದಯಾಂಬುಜದ ಮಧ್ಯ
ಸ್ಥಳದೊಳಗೆ ಮುರವೈರಿಯನು ಹೊರ
ವಳಯದಲಿ ಫಲುಗುಣನ ಮಣಿರಥದಗ್ರಭಾಗದಲಿ
ಹೊಳೆವ ಹರಿಯನು ಕಂಡನಿದು ಹೊರ
ಗೊಳಗೆ ಹರಿ ತಾನೆಂಬಭೇದವ
ತಿಳಿದು ನಿಜದೇಚ್ಚರ ಸಮಾಧಿಯೊಳಿರ್ದನಾ ಕರ್ಣ ೧೦

ಅರಸ ಚಿತ್ತೈಸಾಚೆಯಲಿ ಮುರ
ಹರನಲೇ ನಿಮ್ಮನ್ವಯವ ಸಂ
ಹರಿಸಿದಾತನು ಭೀಮಸೇನನೊ ಮೇಣ್ ಧನಂಜಯನೊ
ಸರಳ ತೊಡುತೊಡು ಪಾರ್ಥ ಕರ್ಣನ
ಶಿರವನಿಳುಹಾ ಹಾರದಿರು ಹೇ
ವರಿಸದಿರು ತೆಗೆ ದಿವ್ಯಶರವನು ಬೇಗಮಾಡೆಂದ ೧೧

ಕರಗುವರೆ ನೀ ಸಾರು ಭೀಮನ
ಕರೆದು ಕೊಲಿಸುವೆನೀತನನು ನಿ
ಷ್ಠುರನಲಾ ನೀನೆನ್ನದಿರು ತೆಗೆ ನಿನ್ನ ತನ್ನಿಂದ
ಹರಿಯದೇ ಹಗೆ ನಮ್ಮ ಚಕ್ರದ
ಲರಿಭಟನ ಮುರಿವೆನು ಯುಧಿಷ್ಠಿರ
ನರಸುತನವದು ನಿಲಲಿ ನೀನಂಜುವರೆ ಸಾರೆಂದ ೧೨

ಈಸು ಕರ್ಣನ ಮೇಲೆ ಬಹಳ
ದ್ವೇಷವೇನೋ ಎನುತ ಮನದಲಿ
ಘಾಸಿಯಾದನು ಪಾರ್ಥ ಕರುಣಕ್ರೋಧದುಪಟಳಕೆ
ಆಸೆಯಿನ್ನೇಕೆನುತ ಸೆಳೆದನು
ಸೂಸುಗಿಡಿಗಳ ಹೊಗೆಯ ಹೊದರಿನ
ಮಿಾಸಲಳಿದಾರೆಂಜಲಿಸದಂಜಳಿಕ ಮಾರ್ಗಣವ ೧೩

ಉರಿಯನುಗುಳುವ ಬಾಣದಲಿ ಕ
ತ್ತರಿಸಿ ಕರ್ಣನನೆಸಲು ಸಮರದ
ಲುರವ ಕೀಲಿಸಿತಂಬು ಗರಿಗಡಿಯಾಗಿ ಗಾಢದಲಿ
ಹರಣ ತೊಲಗದ ಮರ್ಮವನು ಮುರ
ಹರನು ಕಂಡನು ರಥದ ವಾಘೆಯ
ನಿರಿಸಿ ಕರ್ಣನ ಹೊರೆಗೆ ಬಂದನು ವಿಪ್ರವೇಷದಲಿ ೧೪

ತ್ಯಾಗಿ ಜಗದೊಳಗೆಂಬ ಕೀರ್ತಿಯ
ಲೋಗರಿಂದವೆ ಕೇಳ್ದು ಬಂದೆನು
ವೇಗಳತಿಶಯ ಪದವನೊಲುವಡೆ ಮನದ ಬಯಕೆಗಳ
ಈಗಳೀವುದು ನಮ್ಮಭೀಷ್ಟ
ಶ್ರೀಗೆ ಮಂಗಳವೆಂದು ಹರಸಿದ
ಡಾಗಳರಿದಾ ಕರ್ಣ ನಸುನಗುತಿರ್ದ ಮನದೊಳಗೆ ೧೫

ತ್ಯಾಗಿ ಸಿಂಹಾಸನದ ಮೇಲಿ
ದ್ದಾಗ ಬೇಡಿತನೀಯಬೇಹುದು
ಈಗಳೀವುದ ಬೆಸಸಿಯೆನೆ ನಗುತೆಂದನಾ ವಿಪ್ರ
ತೂಗುವೀ ಕುಂಡಲವನೀವುದು
ಬೇಗ ಧಾರೆಯನೆರೆದು ಕೊಡಿಯೆನ
ಲಾಗಳುದಕವನರಸಿ ಕಾಣದೆ ನೋಡಿದನು ಕೆಲನ ೧೬

ಉದಕವನು ಹೊರಗರಸುತಿರಲಾ
ಪದುಮನಾಭನು ನಗುತ ನಿನ್ನಯ
ಹೃದಯದೊಳಗಿರ್ದಮಲಗಂಗಾಜಲವ ತೆಗೆದೆನಗೆ
ಹದುಳದಿಂದೆರೆ ಧಾರೆಯನು ಸಂ
ಪದದ ಮುಕುತಿಯ ಪದವನೊಲುವಡೆ
ಇದು ಶುಭೋದಯವೆಂದು ಮಾಯಾವಿಪ್ರನರುಹಿದನು ೧೭

ಸರಳ ತೆಗೆದನು ಸರಸಿಜಪ್ರಿಯ
ವರ ಸುತನು ತನ್ನುರವ ಬಗಿದನು
ಘುರಿಘುರಿಲು ಘುರಿಲೆನಲು ತೆಗೆದನು ನಿರ್ಮಲೋದಕವ
ಪರಮ ಸಂತೋಷದಲಿ ಧಾರೆಯ
ನೆರೆದು ಕುಂಡಲವೀಯೆ ಮಿಗೆ ಪು
ಷ್ಕರದ ಜನ ಜಯಯೆನಲು ಮುರರಿಪುವೊಲಿದು ಕೈಕೊಂಡ ೧೮

ಪರಮ ಕರುಣಾಸಿಂಧು ಕರ್ಣ
ಗಿರದೆ ನಿಜಮೂರ್ತಿಯನು ತೋರಿದ
ನರುತರ ಪ್ರೇಮದಲಿ ಮುಕುತಿಯ ಪದವ ನೇಮಿಸಿದ
ನರನನೆಚ್ಚರಿಸಿದನು ಕರುಣೆಗೆ
ಕರುಣದನುಸಂಧಾನ ಮಾಣದು
ಧರೆಯೊಳಚ್ಚರಿಯೆನುತ ಬೆರಗಿನೊಳಿದ್ದುದಮರಗಣ ೧೯

ಹಿಂದೆ ಪಾಶುಪತಕ್ಕೆ ಬಳುವಳಿ
ಬಂದುದಂಜನ ಬಾಣವದರೆಣೆ
ಯಿಂದ ತೆಗೆದನು ಗಿರಿಜೆಯಂಘ್ರಿಯ ನೆನೆದು ಮಂತ್ರಿಸುತ
ಮಂದರಾಚಲ ನಡುಗೆ ಕಿಡಿಗಳ
ಸಂದಣಿಯ ಸುರಿವಂಬನಾ ರವಿ
ನಂದನನ ಕೊರಳೆಡೆಯೊಳೆಚ್ಚನು ವಾಸವನ ಸೂನು ೨೦

ಅರಸ ಕೇಳೈ ಕರ್ಣನೊಡಲಲಿ
ಪರಮತೇಜಃಪುಂಜವೊದೆದು
ಪ್ಪರಿಸಿ ಹಾಯ್ದುದು ಹೊಳೆದುದಿನಮಂಡಲದ ಮಧ್ಯದಲಿ
ಅರರೆ ಭಾಪುರೆ ಕರ್ಣ ಮಝು ಭಾ
ಪುರೆ ಭಟಾಗ್ರಣಿ ನಿನ್ನ ಸರಿದೊರೆ
ಯೆರಡು ಯುಗದಲಿ ಕಾಣೆನೆಂದಳಲಿದನು ಹನುಮಂತ ೨೧

ಕೊಟ್ಟ ಭಾಷೆಗೆ ಮರಳಿ ಬಾಣವ
ತೊಟ್ಟನೇ ತಾನೊಡೆಯನೆಂದರೆ
ಯಟ್ಟಿದನೆ ಪಾಂಡವರೊಳನುಸಂಧಾನವನು ಬಿಸುಟು
ನಟ್ಟ ಕಣೆಗಳಂಕಿದನೆ ಕೌರವ
ಕೆಟ್ಟನಕಟಕಟೆಂದು ಕಾಯುವ
ಬಿಟ್ಟ ಕರ್ಣನೊಳಾರು ಸರಿಯೆನುತಿರ್ದುದಮರಗಣ ೨೨

ಬಲುವಿಡಿಯ ಬಿಲು ವಾಮದಲಿ ಬೆರ
ಳೊಳಗೆ ಸವಡಿಸಿ ತೆಗೆವ ತಿರುವಿನ
ಹಿಳುಕು ನಿಮಿರಿದ ತೋಳ ತೋರಿಕೆ ಬಲದ ಭಾಗದಲಿ
ಬಲಿದ ಮುಂಡಿಯ ಬಾಗಿದೊಡಲಿನ
ಹೊಳೆವ ತನುಕಾಂತಿಯ ಮಹೀಪತಿ
ತಿಲಕ ಕೇಳೈ ಕರ್ಣನೆಸೆದನು ರಥದ ಮಧ್ಯದಲಿ ೨೩

ಕಳಚಿ ದುರಿಯೋಧನನ ಬೆಳುಗೊಡೆ
ನೆಲಕೆ ಬೀಳ್ವಂದದಲಿ ಕೌರವ
ಕುಲದ ನಿಖಿಳೈಶ್ವರ್ಯವಿಳೆಗೊರ್ಗುಡಿಸಿ ಕೆಡೆವಂತೆ
ಥಳಥಳಿಪ ನಗೆಮೊಗದ ಗಂಟಿಕಿ
ಬಲಿದ ಹುಬ್ಬಿನ ಬಿಟ್ಟ ಕಂಗಳ
ಹೊಳೆವ ಹಲುಗಳ ಕರ್ಣಶಿರ ಕೆಡೆದುದು ಧರಿತ್ರಿಯಲಿ ೨೪

ಕರ್ಣ ಹಾ ಹಾ ಸೂತಸುತ ಹಾ
ಕರ್ಣ ಹಾ ರಾಧಾತನುಜ ಹಾ
ಕರ್ಣ ಹಾ ಎನ್ನಾನೆ ಹಾ ಬಹಿರಂಗ ಜೀವನವೆ
ನಿರ್ಣಯವು ಕುರುಕುಲಕೆ ಹಾ ಹಾ
ಕರ್ಣ ಮಡಿದೈ ತಂದೆಯೆನುತವೆ
ನಿನ್ನ ಮಗ ರಥದಿಂದ ಧೊಪ್ಪನೆ ಕೆಡೆದನವನಿಯಲಿ ೨೫

ರಾಯ ಹಮ್ಮೈಸಿದನು ಹಾ ರಾ
ಧೇಯ ಹಾ ರಾಧೇಯ ಹಾ ರಾ
ಧೇಯ ಹಾ ಎನ್ನಾನೆ ಬಾರೈ ನಿನ್ನ ತೋರೆನುತ
ಬಾಯಬಿಟ್ಟುದು ಕಯ್ಯ ಕೈದುವ
ಹಾಯಿಕಿತು ಕಂಬನಿಯ ಕಡಲೊಳು
ಹಾಯಿದೆದ್ದುದು ಹೊರಳುತಿರ್ದುದು ಕೂಡೆ ಪರಿವಾರ ೨೬

ನರರ್ಗೆ ಸೈರಣೆಯೆತ್ತಣದು ಕರಿ
ತುರಗ ಕಂಬನಿಗರೆದುದದ್ಭುತ
ತರದ ಶೋಕಾಂಬುಧಿಯ ಸುಳಿಯಲಿ ಸಿಕ್ಕಿತೀ ಸೇನೆ
ಅರಸ ಕೇಳಾಚೆಯಲಿ ಭೀಮನ
ನರ ನಕುಲ ಸಹದೇವ ಸಾತ್ಯಕಿ
ಧರಣಿಪನ ದ್ರೌಪದಿಯ ಚಿಂತೆ ದುರಂತವಾಯ್ತೆಂದ ೨೭

ಕಿತ್ತರೋ ಕಲ್ಪದ್ರುಮವ ಕೆಡೆ
ಗುತ್ತಿದರೊ ಸುರಧೇನುವನು ಕೈ
ವರ್ತಿಸಿದರೋ ಪರುಷವನು ಹಾ ಜಲಧಿ ಮಧ್ಯದಲಿ
ಎತ್ತಣದು ಭಾರತದ ರಣ ನಮ
ಗೆತ್ತಲರಸುತ ಬಂದುದಕಟಾ
ಮಿತ್ತುವೆಂದೊರಲಿದರು ವಂದಿಗಳೆರಡು ಥಟ್ಟಿನಲಿ ೨೮

ಅರಸ ನೀ ಸೈರಿಸಿದೆಲಾ ಶಂ
ಕರ ವಿರಿಂಚಾದಿಗಳು ಕರ್ಣನ
ಪರಮ ಸತ್ಯವ್ರತವ ಕೊಂಡಾಡಿದರು ಅಕಟೆನುತ
ಎರಡು ಥಟ್ಟಿನ ದುಃಖಮಯಸಾ
ಗರವ ಹವಣಿಸಲರಿಯೆನರ್ಜುನ
ತಿರುಗಿದನು ದುಮ್ಮಾನದಲಿ ಪಾಳೆಯಕೆ ಹರಿಸಹಿತ ೨೯

ಇತ್ತ ಪರವಶವಾದ ರಾಯನ
ತೆತ್ತಿಗರು ದಂಡಿಗೆಯೊಳೀತನ
ನೆತ್ತಿ ತಂದರು ಪಾಳೆಯಕೆ ದುಃಸ್ಥಿತಿಯ ಮೇಳೆಯಕೆ
ತೆತ್ತನೇ ಮಗನಸುವನಕಟ ಎ
ನುತ್ತ ಚಿಂತಾರಾಗದಲಿ ಕಡ
ಲತ್ತ ಹಾಯ್ದನು ಬಿಸುಟನಂಬುಜಮಿತ್ರನಂಬರವ ೩೦

ದ್ಯುಮಣಿ ಕರ್ಣದ್ಯುಮಣಿಸಹಿತ
ಸ್ತಮಿಸೆ ಕಮಲಿನಿ ಕೌರವನ ಮುಖ
ಕಮಲ ಬಾಡಿತು ತಿಮಿರ ಹೆಚ್ಚಿತು ಶೋಕತಮದೊಡನೆ
ಅಮಳ ಚಕ್ರಾಂಗಕ್ಕೆ ಭೂಪೋ
ತ್ತಮನ ವಿಜಯಾಂಗನೆಗೆ ಅಗಲಿಕೆ
ಸಮನಿಸಿತು ಕೇಳಯ್ಯ ಜನಮೇಜಯ ಮಹೀಪಾಲ ೩೧

ಇತಿ ಶ್ರೀಮದಚಿಂತ್ಯಮಹಿಮ ಗದುಗು ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪರಿಪುಷ್ಟ ವಚಃಷಟ್ಪದೀನಿಕಾಯ
ಶ್ರೀಮತ್ಕುಮಾರವ್ಯಾಸಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಕರ್ಣಪರ್ವಂ ಸಮಾಪ್ತಮಾದುದು

ಶಲ್ಯ ಪರ್ವ

ಮೊದಲನೆಯ ಸಂಧಿ

ಸೂ. ರಾಯ ಕೇಳೈ ಕದನದಲಿ ರಾ
ಧೇಯನವಸಾನದಲಿ ಕೌರವ
ರಾಯ ದಳಪತಿಯಾಗಿ ಹೊಕ್ಕನು ಶಲ್ಯನಾಹವವ

ಹೇಳರೇ ಭೀಷ್ಮಾದಿ ಹಿರಿಯರು
ಮೇಲುದಾಯವ ಬಲ್ಲವರು ಹೆ
ಚ್ಚಾಳುತನದಲಿ ಹಿಗ್ಗಿ ಕಂಡಿರೆ ಜಯದ ಜಾರುಗಳ
ಮೇಲಣಾಹವದೊಳಗೆ ದೇಹವ
ಬೀಳುಕೊಂಡನು ಶಲ್ಯನಲ್ಲಿಂ
ಮೇಲೆ ದೊರೆಗೇನಾದುದೆಂಬುದನರಿಯೆ ನಾನೆಂದ ೧

ಮರುಳೆ ಸಂಜಯ ಗಾಳಿಯಲಿ ಕುಲ
ಗಿರಿಯು ಬೈಸಿಕೆ ಬಿಚ್ಚಿದಡೆ ಹುಲು
ಮೊರಡಿಗಳ ಬಿಗುಹೇನು ಬೀತಂದು ಕರ್ಣನೊಡ್ಡವಣೆ
ಕುರುಪತಿಯ ಪಾಡೇನು ಮಾದ್ರೇ
ಶ್ವರನ ಮತ್ಸರವೇನು ಸಾಕಂ
ತಿರಲಿ ಸವರಿತೆ ಕೌರವಾನ್ವಯವೆಂದನಂಧನೃಪ ೨

ಬೇಯದೆನ್ನೆದೆ ಶೋಕವಹ್ನಿಯ
ಬಾಯಲಕಟಾ ಕರ್ಣ ಕೌರವ
ರಾಯನಳಿವಿನಲುಳಿವ ಪುತ್ರದ್ರೋಹಿಯಾರಿನ್ನು
ಸಾಯಿಸುವ ಸಾವಂಜಿತೆನಗೆ ಚಿ
ರಾಯು ತೊಡರಿಕ್ಕಿದೆನು ಮಾರ್ಕಂ
ಡೇಯ ಮುನಿಗೆಂದರಸ ಧೊಪ್ಪನೆ ಕೆಡೆದನವನಿಯಲಿ ೩

ಹದುಳಿಸೈ ರಾಜೇಂದ್ರ ನೀ ಬಿ
ತ್ತಿದ ವಿಷದ್ರುಮ ಫಲಿತವಾಯಿತು
ಬೆದರಲೇಕಿನ್ನನುಭವಿಸು ಸಾಕುಳಿದ ಮಾತೇನು
ಕದನದಲಿ ಸಂತನಿಧಿಯ ಹೋಗಾ
ಡಿದೆ ನಿಜಾನ್ವಯ ಕಲ್ಪತರುವನು
ಮದಕರಿಗೆ ಮಾರಿದೆಯೆನುತ ನೆಗಹಿದನು ಭೂಪತಿಯ ೪

ಮಲಗಿಸಿದನೊರವೇಳ್ವ ನಯನ
ಸ್ಥಳವ ನೇವರಿಸಿದನು ಶೋಕಾ
ನಲನ ತಾಪಕೆ ತಂಪನೆರೆದನು ನೀತಿಮಯರಸದ
ಅಳಲಶ್ರವಮಾಡಿದೆ ನದೀಸುತ
ನಳಿವಿನಲಿ ಗುರು ಕರ್ಣ ಶಲ್ಯರ
ಕಳಿವಿನಲಿ ಕಟ್ಟಳಲ ಬಹಳಾಭ್ಯಾಸಿ ನೀನೆಂದ ೫

ಅಹುದು ಸಂಜಯ ಶೋಕಶಿಖಿ ನೆರೆ
ದಹಿಸಿತೆನ್ನನು ಬೆಂದ ವಸ್ತುಗೆ
ದಹನವುಂಟೇ ಎಂಬ ನಾಣ್ಣುಡಿ ನಮ್ಮೊಳಾದುದಲಾ
ಮಿಹಿರಸುತ ಪರಿಯಂತ ಕಥೆ ನಿ
ರ್ವಹಿಸಿ ಬಂದುದು ಶಲ್ಯಕೌರವ
ರೆಹಗೆ ನೆಗಳಿದರದನು ವಿಸ್ತರವಾಗಿ ಹೇಳೆಂದ ೬

ತೆಗೆದುದಾಚೆಯಲವರ ಬಲ ಜಗ
ದಗಲದುಬ್ಬಿನ ಬೊಬ್ಬೆಯಲಿ ಮೊರೆ
ಮುಗಿಲಮುದದಂದದಲಿ ಮೊಳಗುವ ವಾದ್ಯರಭಸದಲಿ
ಬಿಗಿದ ಮೋನದ ಬೀತ ಹರುಷದ
ಹೊಗೆವ ಮೋರೆಯ ಹೊತ್ತುವೆದೆಗಳ
ದುಗುಡದೊಗ್ಗಿನ ನಮ್ಮ ಮೋಹರ ತೆಗೆದುದೀಚೆಯಲಿ ೭

ಸಿಡಿದು ಕರ್ಣನ ತಲೆ ಧರಿತ್ರಿಗೆ
ಕೆಡೆಯೆ ಧೊಪ್ಪನೆ ಮೂರ್ಛೆಯಲಿ ನೃಪ
ಕೆಡೆದು ಕಣ್ಮುಚ್ಚಿದನು ಶೋಕಜ್ವರದ ಢಗೆ ಜಡಿಯೆ
ಹಡಪಿಗರು ಚಾಮರದ ಚಾಹಿಯ
ರೊಡನೆ ನೆಲಕುರುಳಿದರು ಸಾರಥಿ
ಕಡಿಯಣದ ಕುಡಿನೇಣ ಕೊಂಡನು ತಿರುಹಿದನು ರಥವ ೮

ಬಂದು ಕರ್ಣನ ಹಾನಿ ಕೌರವ
ವೃಂದವನು ವೇಢೈಸಿತೇ ಹಾ
ಯೆಂದು ಕೃಪಗುರುಸುತರು ರಥವನು ಬಿಟ್ಟು ಸೂಠಿಯಲಿ
ತಂದು ಬಾಚಿಸಿದರಸನಿರವಂ
ತೆಂದುಸುರನಾರೈದು ವಿಧಿಯನು
ನಿಂದಿಸಿದರವಧಾನ ಜೀಯವಧಾನ ಜೀಯೆನುತ ೯

ತಳಿತಳಿದು ಪನ್ನೀರನಕ್ಷಿಗೆ
ಚಳೆಯವನು ಹಿಡಿದೆತ್ತಿ ಗುರುಸುತ
ಮಲಗಿಸಿದಡೇನಯ್ಯ ಕರ್ಣ ಎನುತ್ತ ಕಂದೆರೆದು
ಘಳಿಲನೆದ್ದನು ಕರ್ಣ ತೆಗೆಸೈ
ದಳವನಿರುಳಾಯ್ತೆಂದು ಶೋಕದ
ಕಳವಳದಲರೆಮುಚ್ಚುಗಣ್ಣಲಿ ಮತ್ತೆ ಮೈಮರೆದ ೧೦

ರಾಯ ಹದುಳಿಸು ಹದುಳಿಸಕಟಾ
ದಾಯಿಗರಿಗೆಡೆಗೊಟ್ಟಲಾ ನಿ
ದಾರ್ಯದಲಿ ನೆಲ ಹೋಯ್ತು ಭೀಮನ ಭಾಷೆ ಸಂದುದಲಾ
ವಾಯುಜನ ಜಠರದಲಿ ತೆಗೆಯಾ
ಜೀಯ ನಿನ್ನನುಜರನು ಪಾರ್ಥನ
ಬಾಯಲುಗಿ ಸೂತಜನನೆಂದರು ಜರೆದು ಕುರುಪತಿಯ ೧೧

ಏನು ಗುರುಸುತ ಮಡಿದನೇ ತ
ನ್ನಾನೆ ಬವರದಲಕಟ ಕುಂತೀ
ಸೂನುವೇಕೈ ತಪ್ಪ ಮಾಡಿದನೇ ಮಹಾದೇವ
ಭಾನುಸನ್ನಿಭ ಸರಿದನೇ ತ
ಪ್ಪೇನು ಪಾರ್ಥನ ಬಸುರಲೆನ್ನ ನಿ
ಧಾನವಿದ್ದುದು ತೆಗೆವೆನೈಸಲೆಯೆಂದು ಕಂದೆರೆದ ೧೨

ತಾಪವಡಗಿತು ಮನದ ಕಡುಹಿನ
ಕೋಪ ತಳಿತುದು ಭೀಮ ಪಾರ್ಥರ
ರೂಪು ಮುಖದಲಿ ಕರ್ಣ ದುಶ್ಶಾಸನರ ಕಲ್ಪಿಸಿದ
ಭೂಪ ಕೇಳೈ ಪಾಳಯಕೆ ಕುರು
ಭೂಪ ಬಂದನು ನಾಳೆ ಕರ್ಣೋ
ತ್ಥಾಪನವಲಾ ಎನುತ ಹೊಕ್ಕನು ಭದ್ರಮಂಟಪವ ೧೩

ಶಕುನಿ ಕೃಪ ಗುರುಸೂನು ಕೃತವ
ರ್ಮಕ ಸುಕೇತು ಸುಶರ್ಮ ಸಮಸ
ಪ್ತಕರು ಮಾದ್ರೇಶ್ವರ ಸುಬಾಹು ಸುನಂದ ಚಿತ್ರರಥ
ಸಕಲ ಸುಭಟರು ಸಹಿತ ದಳನಾ
ಯಕರು ಬಂದರು ಕರ್ಣಹಾನಿ
ಪ್ರಕಟ ಕಳಿತ ಶಿರೋವಕುಂಠನ ವೈಮನಸ್ಯದಲಿ ೧೪

ಹಿಮದ ಹೊಯ್ಲಲಿ ಸೀದು ಸಿಕ್ಕಿದ
ಕಮಲವನದಂದದಲಿ ಹತವಿ
ಕ್ರಮದ ಕೀರ್ತಿಯ ಬಹಳಭಾರಕೆ ಬಳುಕಿದಾನನದ
ಸುಮುಖತಾವಿಚ್ಛೇದ ಕಲುಷ
ಸ್ತಿಮಿತರಿರವನು ಕಂಡು ನಾಳಿನ
ಸಮರಕೇನುದ್ಯೋಗವೆಂದನು ಕೃಪನ ಗುರುಸುತನ ೧೫

ಅರಸ ಕರ್ಣಚ್ಛೇದವೇ ಜಯ
ಸಿರಿಯ ನಾಸಾಚ್ಛೇದವಿನ್ನರ
ವರಿಸದಿರು ಹೊಯ್ದಾಡಿ ಹೊಗಳಿಸು ಬಾಹುವಿಕ್ರಮವ
ಗುರುನದೀಸುತರಳಿದ ಬಳಿಕೀ
ಧರೆಗೆ ನಿನಗಸ್ವಾಮ್ಯ ಕರ್ಣನ
ಮರಣದಲಿ ನೀನರ್ಧದೇಹನು ಭೂಪ ಕೇಳೆಂದ ೧೬

ಆ ವೃಕೋದರ ನರರೊಳಂತ
ರ್ಭಾವ ದುಶ್ಶಾಸನಗೆ ತನ್ನಯ
ಜೀವಸಖಗಾ ಭೀಮ ಪಾರ್ಥರ ಮರಣಸಿದ್ಧಿಯಲಿ
ಕೈವಿಡಿಯಲೇ ಕರ್ಣನಿಹನೆಂ
ದಾವು ನಿಶ್ಚಯಿಸಿದೆವು ಕರ್ಣನ
ಸಾವ ನಾಳಿನೊಳರಿವೆನೆಂದನು ನಿನ್ನ ಮಗ ನಗುತ ೧೭

ನಾವು ಹೊಯ್ದಾಡುವೆವು ಭುಜಸ
ತ್ತ್ವಾವಲಂಬವ ತೋರುವೆವು ಕ
ರ್ಣಾವಸಾನವ ಕಂಡು ಬಳಿಕುಗುಳುವೆವು ತಂಬುಲವ
ನೀವು ಸೇನಾಪತ್ಯವನು ಸಂ
ಭಾವಿಸಿರೆ ಸಾಕಿನ್ನು ಮಿಗಿಲಾ
ದೈವಕೃತ ಪೌರುಷವ ನಾಳಿನೊಳರಿಯಬಹುದೆಂದ ೧೮

ಧರಣಿಪತಿ ಚಿತ್ತೈಸು ಸೇನಾ
ಧುರವನೀವುದು ಮದ್ರಭೂಪತಿ
ಗೆರವಲಾ ಜಯಲಕ್ಷ್ಮಿ ಬಳಿಕಾ ಪಾಂಡುತನಯರಿಗೆ
ಸುರನದೀಜ ದ್ರೋಣ ರಾಧೇ
ಯರಿಗೆ ಸರಿಮಿಗಿಲಿಂದು ಮಾದ್ರೇ
ಶ್ವರನುಳಿಯೆ ದೊರೆಯಾರು ದಿಟ್ಟರು ನಮ್ಮ ಥಟ್ಟಿನಲಿ ೧೯

ನೀವು ಕಟಕಾಚಾರ್ಯಪುತ್ರರು
ನೀವಿರಲು ಕೃಪನಿರಲು ದಳವಾಯ್
ನಾವಹೆವೆ ನೀವಿಂದು ತೇಜೋದ್ವಯದಲಧಿಕರಲೆ
ನಾವು ತರುವಾಯವರೆನಲು ಜಯ
ಜೀವಿಗಳು ನೀವನ್ಯಗುಣಸಂ
ಭಾವಕರಲಾ ಎಂದನಶ್ವತ್ಥಾಮ ಶಲ್ಯಂಗೆ ೨೦

ಉಚಿತವಿತರೇತರಗುಣಸ್ತುತಿ
ರಚನೆ ಗುಣಯುಕ್ತರಿಗೆ ವಿಜಯೋ
ಪಚಿತ ರಣನಾಟಕಕೆ ಜವನಿಕೆಯಾಯ್ತಲೇ ರಜನಿ
ಅಚಲ ಮೂರರ ಪೈಸರದ ಬಲ
ನಿಚಯ ನಮ್ಮದು ವೀರ ಸುಭಟ
ಪ್ರಚಯ ಮುಖ್ಯರ ಮಾಡಿಯೆಂದನು ಕೃಪನು ಕುರುಪತಿಗೆ ೨೧

ಸುರನದೀಜ ದ್ರೋಣ ಕೃಪರೀ
ಕುರುಬಲಕೆ ಕಟ್ಟೊಡೆಯರವರಿ
ಬ್ಬರ ಪರೋಕ್ಷದಲಾರವಿಲ್ಲಿಯ ಹಾನಿವೃದ್ಧಿಗಳು
ಗುರು ಸುತನೊ ಶಲ್ಯನೊ ಚಮೂಮು
ಖ್ಯರನು ನೀವೇ ಬೆಸಸಿಯೆಂದನು
ಧರಣಿಪತಿ ಕೇಳೈ ಕೃಪಾಚಾರ್ಯಂಗೆ ಕುರುರಾಯ ೨೨

ಆದಡಾ ಭೀಷ್ಮಾದಿ ಸುಭಟರು
ಕಾದಿ ನೆಗ್ಗಿದ ಕಳನ ಹೊಗುವಡೆ
ಕೈದುಕಾರರ ಕಾಣೆನೀ ಮಾದ್ರೇಶ ಹೊರಗಾಗಿ
ಈ ದುರಂತರ ಸಮರಜಯ ನಿನ
ಗಾದಡೊಳ್ಳಿತು ಶಲ್ಯನಲಿ ಸಂ
ಪಾದಿಸಿರೆ ಸೇನಾಧಿಪತ್ಯವನರಸ ಕೇಳೆಂದ ೨೩

ತರಿಸಿ ಮಂಗಳವಸ್ತುಗಳನಾ
ದರಿಸಿ ಭದ್ರಾಸನದಲೀತನ
ನಿರಿಸಿ ನೃಪ ವಿಸ್ತರಿಸಿದನು ಮೂರ್ಧಾಭಿಷೇಚನವ
ಮೊರೆವ ವಾದ್ಯದ ಸಿಡಿಲ ಧರಣೀ
ಸುರರ ಮಂತ್ರಾಕ್ಷತೆಯ ಮಳೆಗಳೊ
ಳಿರುಳನುಗಿದವು ಮುಕುಟಮಣಿರಾಜಿಗಳ ಮಿಂಚುಗಳು ೨೪

ಆದುದುತ್ಸವ ಕರ್ಣಮರಣದ
ಖೇದವುಕ್ಕಿತು ಹಗೆಗೆ ಕಾಲ್ವೊಳೆ
ಯಾದ ವೀರರಸಾಬ್ಧಿ ನೆಲೆದಪ್ಪಿತ್ತು ನಿಮಿಷದಲಿ
ಬೀದಿವರಿದುದು ಬಿಂಕ ನನೆಕೊನೆ
ವೋದುದಾಶಾಬೀಜ ಲಜ್ಜೆಯ
ಹೋದ ಮೂಗಿಗೆ ಕದಪ ಹೊಯ್ದನು ನಿನ್ನ ಮಗನೆಂದ ೨೫

ಕಾಣಿಕೆಯನಿತ್ತಖಿಳ ಸುಭಟ
ಶ್ರೇಣಿ ಕಂಡುದು ನುಡಿಯ ಹಾಣಾ
ಹಾಣಿಗಳ ಭಾಷೆಗಳ ಹಕ್ಕಲು ವೀರರುಕ್ಕಿಗಳ
ಪ್ರಾಣಚುಳಕೋದಕದ ಚೇಷ್ಟೆಯ
ಹೂಣಿಗರು ವಿಜಯಾಂಗನೋಪ
ಕ್ಷೀಣಮಾನಸರೊಪ್ಪಿದರು ಕುರುಪತಿಯ ಪರಿವಾರ ೨೬

ಪತಿಕರಿಸಿದೈ ವೀರಸುಭಟ
ಪ್ರತತಿಮಧ್ಯದಲೆಮ್ಮನಹಿತ
ಚ್ಯುತಿಗೆ ಸಾಧನವೆಂದು ನಿಜಸೇನಾಧಿಪತ್ಯದಲಿ
ಕೃತಕವಿಲ್ಲದೆ ಕಾದುವೆನು ಯಮ
ಸುತರೊಡನೆ ಜಯಸಿರಿಗೆ ನೀನೇ
ಪತಿಯೆನಿಸಿ ತೋರಿಸುವೆನೆಂದನು ಶಲ್ಯ ಕುರುಪತಿಗೆ ೨೭

ಉಬ್ಬಿದನಲೈ ಮಧುರವಚನದ
ಹಬ್ಬದಲಿ ನಿನ್ನಾತನಿತ್ತಲು
ತುಬ್ಬಿನವದಿರು ತಂದು ಬಿಸುಟರು ನಿಮ್ಮ ಪಾಳೆಯದ
ಸರ್ಬ ವೃತ್ತಾಂತವನು ಗಾಢದ
ಗರ್ಬ ಮುರಿದುದು ಕೃಷ್ಣರಾಯನ
ನೆಬ್ಬಿಸಿದನಿರುಳವನಿಪತಿ ಬಿನ್ನೈಸಿದನು ಹದನ ೨೮

ದೇವ ಚಿತ್ತೈಸಿದರೆ ಬೊಪ್ಪನ
ಭಾವನನು ಸೇನಾಧಿಪತ್ಯದ
ಲೋವಿದರಲೇ ಶಲ್ಯ ಮಾಡಿದ ಭಾಷೆಯುವರೊಡನೆ
ಆವನಂಘೈಸುವನೊ ಪಾರ್ಥನೊ
ಪಾವಮಾನಿಯೊ ನಕುಲನೋ ಸಹ
ದೇವನೋ ತಾನೋ ನಿದಾನಿಸಲರಿಯೆ ನಾನೆಂದ ೨೯

ಕಲಹವೆನ್ನದು ದಳಪತಿಗೆ ತಾ
ನಿಲುವೆನೆಂದನು ಭೀಮನೆನ್ನನು
ಕಳುಹಿ ನೋಡೆಂದನು ಧನಂಜಯನೆಮ್ಮ ಮಾವನಲಿ
ಸಲುಗೆಯೆನಗೆಂದನು ನಕುಲನೆ
ನ್ನೊಲವಿನರ್ತಿಯಿಂದೆನ್ನ ಕಳುಹಿದ
ಡುಳುಹಿದವರೆಂದೆರಗಿದನು ಸಹದೇವನಾ ಹರಿಗೆ ೩೦

ಹರಿಯುದರ್ಜುನನಿಂದ ಭೀಮನ
ನೆರವಣಿಗೆ ನೋಯಿಸದು ನಕುಲನ
ಹೊರಿಗೆಯೊದಗದು ಸೈರಿಸದು ಸಹದೇವನಾಟೋಪ
ಇರಿವಡಾ ಮಾದ್ರೇಶನನು ನೆರೆ
ಮುರಿವಡೆಯೂ ನಿನಗಹುದು ನಿನ್ನನು
ತರುಬಿದವರೇ ಕಷ್ಟರೆಂದನು ನಗುತ ಮುರವೈರಿ ೩೧

ಲೇಸನಾಡಿದೆ ಕೃಷ್ಣ ಶಲ್ಯಂ
ಗೀಸು ಬಲುಹುಂಟಾದಡನುಜರು
ಘಾಸಿಯಾದರು ಹಿಂದೆ ಭೀಷ್ಮಾದಿಗಳ ಬವರದಲಿ
ಈ ಸಮರಜಯವೆನಗೆ ನಾಳಿನೊ
ಳೈಸಲೇ ನಳ ನಹುಷ ಭರತ ಮ
ಹೀಶ ವಂಶೋತ್ಪನ್ನ ತಾನೆಂದನು ಮಹೀಪಾಲ ೩೨

ತಾಯಿ ಹೆರಳೇ ಮಗನ ನಿನ್ನನು
ನಾಯಕನೆ ಲೋಕೈಕವೀರರ
ತಾಯಲಾ ನಿಮ್ಮವ್ವೆಯಾ ಮೊಲೆವಾಲ ಬಲುಹಿನಲಿ
ರಾಯ ನೀ ಕ್ಷತ್ರಿಯನು ಸೇಸೆಯ
ತಾಯೆನುತ ತೂಪಿರಿದು ಕಮಲದ
ಳಾಯತಾಂಬಕನಪ್ಪಿಕೊಂಡನು ಧರ್ಮನಂದನನ ೩೩

ಸಂದವೈ ಹದಿನೇಳು ರಾತ್ರಿಗ
ಳಿಂದಿನಿರುಳಾ ಸೇನೆ ನಿರ್ಭಯ
ದಿಂದ ನಿದ್ರಾವ್ಯಸನನಿರ್ಭರ ಪೂರ್ಣ ಹರುಷದಲಿ
ಸಂದುದೀ ನಿನ್ನವರು ರಾಧಾ
ನಂದನವ್ಯಪಗಮನನಷ್ಟಾ
ನಂದವಿಹ್ವಲಕರಣರಿದ್ದರು ಭೂಪ ಕೇಳೆಂದ ೩೪

ಆ ಶಿಖಂಡಿಯ ತೋರಿ ಸರಳಿನ
ಹಾಸಿಕೆಯಲೊಬ್ಬನನ ಮಾತಿನ
ವಾಸಿಯಿಂದೊಬ್ಬನನು ಮುನ್ನಿನ ಕುಲವನೆಚ್ಚರಿಸಿ
ಘಾಸಿ ಮಾಡಿದನೊಬ್ಬನನು ಧರ
ಣೀಶ ಚೇಷ್ಟೆಯಲೊಬ್ಬನನು ಕೃಪೆ
ಯೇಸು ಘನವೋ ವೀರನಾರಾಯಣಗೆ ಭಕ್ತರಲಿ ೩೫

ಎರಡನೆಯ ಸಂಧಿ

ಸೂ. ಗಂಡುಗಲಿ ಕದನ ಪ್ರಚಂಡನ
ಖಂಡ ಭುಜಬಲ ಧರ್ಮಸುತ ಮುಂ
ಕೊಂಡು ರಣದಲಿ ಕಾದಿ ಗೆಲಿದನು ಮಾದ್ರ ಭೂಪತಿಯ

ಒಳಗೆ ಧಗೆ ನಗೆ ಹೊರಗೆ ಕಳವಳ
ವೊಳಗೆ ಹೊರಗೆ ನವಾಯಿ ಡಿಳ್ಳಸ
ವೊಳಗೆ ಹೊರಗೆ ಸಘಾಡಮದ ಬಲುಬೇಗೆಯೊಳಗೊಳಗೆ
ಬಲುಹು ಹೊರಗೆ ಪರಾಭವದ ಕಂ
ದೊಳಗೆ ಕಡುಹಿನ ಕಲಿತನದ ಹಳ
ಹಳಿಕೆ ಹೊರಗೆ ಮಹೀಶ ಹದನಿದು ನಿನ್ನ ನಂದನನ ೧

ನೆಗ್ಗಿದನು ಗಾಂಗೇಯನಮರರೊ
ಳೊಗ್ಗಿದನು ಕಲಿದ್ರೋಣನೆನ್ನವ
ನಗ್ಗಳಿಕೆಗೂಣೆಯವ ಬೆರಸಿದನೆನ್ನ ಬಿಂಬದಲಿ
ಉಗ್ಗಡದ ರಣವಿದಕೆ ಶಲ್ಯನ
ನಗ್ಗಿಸುವನೀ ಕೌರವೇಶ್ವರ
ನೆಗ್ಗ ನೋಡುವೆನೆಂಬವೊಲು ರವಿಯಡರ್ದನಂಬರವ ೨

ಸೂಳವಿಸಿದುವು ಸನ್ನೆಯಲಿ ನಿ
ಸ್ಸಾಳ ದಳಪತಿ ಕುರುಬಲದೆ
ಖ್ಖಾಳವನು ನೋಡಿದನು ತೂಗಾಡಿದನು ಮಣಿಶಿರವ
ಆಳು ನೆರೆದಿರೆ ನಾಲ್ಕು ದಿಕ್ಕಿನ
ಮೂಲೆ ನೆರೆಯದು ಮುನ್ನವೀಗಳು
ಪಾಳೆಯದ ಕಡೆವೀಡಿಗ್ಗೆದದು ಶಿವಶಿವಾಯೆಂದ ೩

ಗಜಕೆ ಗುಳವನು ಬೀಸಿ ವಾಜಿ
ವ್ರಜವ ಹಲ್ಲಣಿಸಿದರು ಗಾಲಿಯ
ಗಜರು ಘೀಳಿಡೆ ನೊಗನ ಹೆಗಲಲಿ ಕುಣಿದವಶ್ವಚಯ
ಭುಜದ ಹೊಯ್ಲಿನ ಹರಿಗೆಗಳ ಗಜ
ಬಜದ ಬಿಲುಜೇವಡೆಯ ರವದ
ಕ್ಕಜದ ಕಾಲಾಳೊದಗಿತವನೀಪತಿಯ ಸನ್ನೆಯಲಿ ೪

ಮೊರೆವ ಕಹಳಾರವದ ಡಿಂಡಿಮ
ಮುರಜ ಗೋಮುಖ ಪಟಹ ಜರ್ಝರ
ಕರಡೆ ಪಣವ ಮೃದಂಗ ಡಮರುಗ ಢಕ್ಕೆ ಡವುಡೆಗಳ
ಬಿರಿಯೆ ನೆಲನಳ್ಳಿರಿವ ವಾದ್ಯದ
ಹರುಷತರ ನಿರ್ಘೋಷದಬ್ಬರ
ಜರಿಹಿತಡಕಿಲು ಜಗದ ಜೋಡಿಯನರಸ ಕೇಳೆಂದ ೫

ಮುರಿದ ಬಲುಗುದುರೆಗಳ ಬಾದಣ
ಗೊರೆದ ಮಯ್ಯಾನೆಗಳ ಹತ್ತಿಗೆ
ಹರಿದ ಗಾಲಿಯ ರಥವ ಚಿನಕಡಿವಡೆದ ಕಾಲಾಳ
ಅರುಹಿದರು ಭೂಪತಿಗೆ ಸೇನೆಯ
ಲರಸಿ ತೆಗೆದಾಯತ ಚತುರ್ಬಲ
ಹೊರಗೆ ನಿಂದುದು ಹೊಗೆದೆಗೆದ ಕೇಸುರಿಯ ತಿರುಳಂತೆ ೬

ಹತ್ತು ಸಾವಿರದೇಳುನೂರರು
ವತ್ತು ಗಜ ಹನ್ನೊಂದು ಸಾವಿರ
ಹತ್ತಿದವು ರಥವೆರಡು ಲಕ್ಕವನೆಣಿಸಿದರು ಹಯವ
ಪತ್ತಿ ಮೂರೇ ಕೋಟಿಯದು ಕೈ
ವರ್ತಿಸಿತು ದಳಪತಿಗೆ ಸಾಗರ
ಬತ್ತಲೆಡೆಯಲಿ ನಿಂದ ನೀರವೊಲಾಯ್ತು ಕುರುಸೇನೆ ೭

ವೈರಿಬಲದೊಳಗಾರು ಸಾವಿರ
ತೇರು ಗಜಘಟೆ ಮೂರು ಸಾವಿರ
ವಾರುವಂಗಳನೆಣಿಸಿ ತೆಗೆದರು ಹತ್ತು ಸಾವಿರವ
ವೀರಭಟರಾಯ್ತೊಂದು ಕೋಟಿ ಮ
ಹೀರಮಣ ಕೇಳುಭಯಬಲ ವಿ
ಸ್ತಾರ ಹದಿನೆಂಟೆನಿಸಿದಕ್ಷೋಹಿಣಿಯ ಶೇಷವಿದು ೮

ಶಕುನಿ ಮೋಹರಿಸಿದನು ಸಮಸ
ಪ್ತಕರು ಬೇರೊಡ್ಡಿದರು ಕೃತವ
ರ್ಮಕ ಕೃಪಾಶ್ವತ್ಥಾಮರೊದಗಿದರೊಂದು ಬಾಹೆಯಲಿ
ಸಕಲ ಬಲ ಮಾದ್ರೇಶ್ವರನ ಹೇ
ಳಿಕೆಯಲೊಯ್ಯಾರಿಸಿತು ಕುರುಬಲ
ನಿಕರ ತಳಿತುದು ತರವಿಡಿದು ಕಳೆನೊಂದು ಮೂಲೆಯಲಿ ೯

ಇದಿರಲೌಕಿತು ಗಾಳಿ ಪಟ್ಟದ
ಮದಗಜಾವಳಿ ಮುಗ್ಗಿದುವು ಧ್ವಜ
ವದಿರಿದವು ಹೊಡೆಗೆಡೆದು ಹೊಳೆದುದು ತೇರು ದಳಪತಿಯ
ಬಿದಿರಿದವು ತಡಿಸಹಿತ ಥಟ್ಟಿನ
ಕುದುರೆ ಮೈಗಳಲಾಯುಧದ ಕಿಡಿ
ಯುದುರಿದವು ಕುರುಬಲದಲದ್ಭುತವಾಯ್ತು ನಿಮಿಷದಲಿ ೧೦

ಬಂದುದಾ ಮೋಹರ ಬಲೌಘದ
ಮುಂದೆ ಪಾಠಕರವರ ಕಾಹಿಗೆ
ಹಿಂದೆ ಬಿಲ್ಲಾಳವರ ಸುಯ್ದಾನದಲಿ ಸಬಳಿಗರು
ಹಿಂದೆ ತುರಗ ಸಮೂಹವಲ್ಲಿಂ
ಹಿಂದೆ ಗಜಘಟೆ ಗಜದ ಬಳಿಯಲಿ
ಸಂದಣಿಸಿದುದು ರಾಯದಳ ಮಣಿರಥ ನಿಕಾಯದಲಿ ೧೧

ಅರಸನೆಡವಂಕದಲಿ ಸಾತ್ಯಕಿ
ನರ ನಕುಲ ಸಹದೇವ ಸೋಮಕ
ವರ ಯುಧಾಮನ್ಯೂತ್ತಮೌಜಸ ಸೃಂಜಯಾದಿಗಳು
ನೆರೆದುದಾ ಬಲವಂಕದಲಿ ತನು
ಜರು ವೃಕೋದರ ದ್ರುಪದಸುತ ದು
ರ್ಧರ ಶಿಖಂಡಿ ಪ್ರಮುಖ ಘನಪಾಂಚಾಲ ಪರಿವಾರ ೧೨

ಆಯಂತಿಕೆಯಲಿ ಬಂದು ಪಾಂಡವ
ರಾಯದಳ ಮೋಹರಿಸಿ ನಿಂದುದು
ರಾಯರಿಬ್ಬರ ಬೀಸುಗೈಗಳ ಸನ್ನೆ ಸಮವಾಗೆ
ತಾಯಿಮಳಲನು ತರುಬಿದಬುಧಿಯ
ದಾಯಿಗರು ತಾವಿವರೆನಲು ಬಿಡೆ
ನೋಯಬೆರಸಿದುದುಭಯಬಲ ಬಲುಖತಿಯ ಬಿಂಕದಲಿ ೧೩

ಕೇಣವಿಲ್ಲದೆ ಭಟರ ಹಾಣಾ
ಹಾಣಿ ಮಸಗಿತು ಖಣಿಖಟಿಲ ಹೊ
ಯ್ದಾಣೆಗಳ ಬಿರುಗಿಡಿಯ ಹಿರಿಯಬ್ಬಣದ ಹೊಯ್ಲುಗಳ
ಹೂಣಿಕೆಯ ಸಬಳಿಗರೊಳಿಮ್ಮೈ
ಗಾಣಿಕೆಯ ಬಲುಸೂತರಥಿಕರ
ಜಾಣತಿಯ ಬಿಲ್ಲವರ ಧಾಳಾಧೂಳಿ ಬಲುಹಾಯ್ತು ೧೪

ರಾವುತರು ಸೆಲ್ಲಿಸಿದರಗ್ಗದ
ಮಾವುತರನಾನೆಗಳ ತುಡುಕಿ ಹ
ಯಾವಳಿಯ ಬೀಸಿದರು ರಥಿಕರು ಹಾಯ್ಸಿದರು ರಥವ
ಆ ವರೂಥವನೇಳನೆಂಟ ಗ
ಜಾವಳಿಗಳಿಟ್ಟವು ಗಜಸ್ಕಂ
ಧಾವಲಂಬವ ಸೆಕ್ಕಿದರು ಸುರಗಿಯಲಿ ಸಮರಥರು ೧೫

ಒರಲೆ ಗಜ ದಾಡೆಗಳ ಕೈಗಳ
ಹರಿಯಹೊಯ್ದರು ಪಾರಕರು ಮು
ಕ್ಕುರಿಕಿದರೆ ಸಬಳಿಗರು ಕೋದೆತ್ತಿದರು ಕರಿಘಟೆಯ
ತರುಬಿದರೆ ಕಡಿನಾಲ್ಕ ತೋರಿಸಿ
ಮೆರೆದರುರೆ ರಾವುತರು ರಾವ್ತರ
ತರುಬಿದರು ತನಿಚೂಣಿ ಮಸಗಿತು ತಾರುಥಟ್ಟಿನಲಿ ೧೬

ಅರಸ ಕೇಳೈ ಹೊಕ್ಕ ಚೂಣಿಯ
ನೆರಡು ಬಲದಲಿ ಕಾಣೆನಗ್ಗದ
ದೊರೆಗಳನುವಾಯ್ತಾಚೆಯಲಿ ಧರ್ಮಜನ ನೇಮದಲಿ
ಗುರುಜ ಕೃಪ ಕೃತವರ್ಮ ಯವನೇ
ಶ್ವರ ಸುಶರ್ಮ ಸುಬಾಹು ಶಕುನಿಗ
ಳುರವಣಿಸಿತೀಚೆಯಲಿ ಶಲ್ಯನ ಬೆರಳ ಸನ್ನೆಯಲಿ ೧೭

ನಿಲಿಸಿದರು ನಿನ್ನವರು ಬಲದ
ಗ್ಗಳೆಯರನು ಬಿರುದಾವಳಿಯ ಮೂ
ದಲಿಸಿದರು ವಿಮಲಾನ್ವಯಾಗತ ವಿಕ್ರಮೋನ್ನತರ
ಬಲನೆಡನ ಮಡಿವೆರಳ ಮುಂಡಿಮುಂ
ದಲೆಯ ಲಘುವಾಗದಿರಿ ಶಸ್ತ್ರಾ
ವಳಿಯ ಬಾಯ್ದುತ್ತುಗಳ ಸೆಳೆಯದಿರೆಂದರುಬ್ಬಿನಲಿ ೧೮

ದೊರೆಯೊಳೊಬ್ಬನ ಹಾನಿ ಭಟರೆ
ಲ್ಲರಿಗೆ ದೊರೆ ದೊರೆ ತತ್ತರುಳಿದರು
ನೆರವು ಬಹುದೋರಂದವೊಮ್ಮುಖವೊಂದು ಸಂಕೇತ
ಉರವಣಿಸದಿರಿ ಕಂಡ ಮುಖದಲಿ
ಕರಿ ತುರಗ ರಥ ಪತ್ತಿ ರಣಕು
ಬ್ಬರಿಸದಿರಿ ಕೃತಸಮಯವೆಂದರು ಸಾರಿ ಸುಭಟರಿಗೆ ೧೯

ನೂಕಿದರು ನಿನ್ನವರು ಹಿನ್ನೆಲೆ
ಯಾಕೆವಾಳರ ಜೋಕೆಯಲಿ ರಣ
ವೋಕರಿಸಿತರುಣಾಂಬುವನು ಗಜಹಯದ ಮೈಗಳಲಿ
ವ್ಯಾಕುಲರ ಬಯ್ಬಯ್ದು ಚಪಲಾ
ನೀಕ ಬಂಡಿಸಿ ಚಂಡಪಾತ ನಿ
ರಾಕರಿಷ್ಣುಗಳೊಕ್ಕಲಿಕ್ಕಿತು ದಳದ ಮಧ್ಯದಲಿ ೨೦

ಕವಿದುದೊಂದೇ ಸೂಠಿಯಲಿ ರಿಪು
ನಿವಹ ನಿಬ್ಬರದಬ್ಬರದ ಶರ
ಲವಣಿಗಳ ಲಾವಣಿಗೆಗಳ ಲಂಬನದ ಲಂಘನದ
ಪವನಜನ ಪಡಿಬಲದಲೌಕಿದ
ನವನಿಪತಿ ಸಹದೇವ ನಕುಲರ
ಸವಡಿರಥ ಸಮ್ಮುಖಕೆ ಬಿಟ್ಟವು ಮಾದ್ರಭೂಪತಿಯ ೨೧

ಆರಿವರು ಸಹದೇವ ನಕುಲರೆ
ಭಾರಿಯಾಳುಗಳಹಿರಲೇ ಬಿಲು
ಗಾರರಲ್ಲಾ ಕಳಶಸಿಂಧನ ಕೋಲ ಮಕ್ಕಳಲೇ
ಸೈರಿಸಿದರೊಪ್ಪುವುದಲೇ ಜು
ಜ್ಝಾರತನಕಾಭರಣವಹುದೆನು
ತಾರುಭಟೆಯಲಿ ಶಲ್ಯ ಹಳಚಿದನರ್ಜುನಾನುಜರ ೨೨

ಪಡಿತಳಿಸಿ ಸಹದೇವ ನಕುಲರ
ನಡೆಗಲಸಿತರ್ಜುನನ ರಥ ನರ
ನೊಡನೆ ಹೊಕ್ಕನು ಭೀಮನುರು ಪಾಂಚಾಲಬಲ ಸಹಿತ
ಜಡಿವ ನಿಸ್ಸಾಳದಲಿ ಜಗ ಕಿವಿ
ಗೆಡೆ ಯುಧಿಷ್ಠಿರರಾಯನೌಕಿದ
ನೆಡಬಲನ ಕೊಂಡರು ಯುಯುತ್ಸು ಶಿಖಂಡಿ ಸೃಂಜಯರು ೨೩

ಏರಿತೊಬ್ಬನ ಮೇಲೆ ರಿಪುರಥ
ವಾರು ಸಾವಿರ ಮತ್ತಗಜಘಟೆ
ಮೂರು ಸಾವಿರ ಹತ್ತು ಸಾವಿರ ತುರಗದಳ ಸಹಿತ
ತೂರುವಂಬಿನ ತಂಡಿಸುವ ಬಿ
ಟ್ಟೇರುಗಳ ಚೂರಿಸುವ ಸಬಳದ
ಗೀರುಗಳ ಕಾಲಾಳು ಕವಿದುದು ಶಲ್ಯನಳವಿಯಲಿ ೨೪

ದಳಪತಿಯ ಮುಕ್ಕುರುಕಿದರು ಪಡಿ
ಬಲವ ಬರಹೇಳೆನುತ ಚಾಚಿದ
ಹಿಳುಕುಗೆನ್ನೆಯ ಹೊಗರುಮೋರೆಯ ಬಿಗಿದ ಹುಬ್ಬುಗಳ
ಕಳಶಜನ ಸುತನೌಕಿದನು ಕೃಪ
ನಳವಿಗೊಟ್ಟನು ಸುಬಲಸುತನಿ
ಟ್ಟಳಿಸಿದನು ಕರ್ಣಾತ್ಮಜರು ಕೈಕೊಂಡರೊಗ್ಗಿನಲಿ ೨೫

ನೆತ್ತಿಯಂಗತೆಗಳಂಕುಶದ ಬೆರ
ಳೊತ್ತುಗಿವಿಗಳ ಕರದ ಪರಿಘದ
ಮತ್ತಗಜಘಟೆಗಳನು ನೂಕಿದರೆಂಟು ಸಾವಿರವ
ಸುತ್ತು ಝುಲ್ಲಿಯ ಝಲ್ಲರಿಯ ಬಲು
ಹತ್ತುಗೆಯ ಬಿರುಬುಗಳ ತೇರಿನ
ಹತ್ತು ಸಾವಿರ ಹೊಯ್ದರುದೆಗೆದವು ಶಲ್ಯನೆಡಬಲಕೆ ೨೬

ಮೂರು ಕೋಟಿ ಪದಾತಿಯಲಿ ದೊರೆ
ಯೇರಿದನಲೈ ನಿನ್ನ ಮಗನು
ಬ್ಬೇರಿರಾವ್ತರು ಹೊಕ್ಕರೆರಡೇ ಲಕ್ಕ ತೇಜಿಯಲಿ
ಕೇರಿದರು ಮಾರೊಡ್ಡನಿವರವ
ರೇರಿ ಹೊಯ್ದರು ನಿನ್ನವರನೊಗು
ವೇರ ಬಾಯ್ಗಳ ರುಧಿರಜಲವದ್ದುದು ಚತುರ್ಬಲವ ೨೭

ತಪ್ಪಿಸಿದ ಮೈಮೈಗಳಲಿ ಹರಿ
ತಪ್ಪ ರಕ್ತವ ಸುರಿದು ಕೆಂಧೂ
ಳುಪ್ಪರಿಸಿದುದು ಚಟುಳ ಚಾತುರ್ಬಲದ ಪದಹತಿಗೆ
ಅಪ್ಪಿದುದು ಕೆಂಧೂಳಿನೊಡ್ಡಿನ
ದರ್ಪಣದ ತನಿರಕ್ತವೆರಡರ
ದರ್ಪವಡಗದು ನಿಮಿಷದಲಿ ನರನಾಥ ಕೇಳೆಂದ ೨೮

ತೆಗೆದರರ್ಜುನನನು ಸುಶರ್ಮನ
ವಿಗಡ ರಥಿಕರು ಭೀಮಸೇನನ
ನುಗಿದನಿತ್ತಲು ನಿನ್ನ ಮಗನಾ ಸಾತ್ಯಕಿಯ ರಥವ
ಹೊಗರುಂಗಣೆಯಲಿ ಮುಸುಕಿದನು ಹೂ
ಣೆಗನಲೇ ಗುರುಸೂನು ನಕುಲನ
ತೆಗೆಸಿದನು ತೂರಂಬಿನಲಿ ತೆರಳದೆ ಕೃಪಾಚಾರ್ಯ ೨೯

ಹಳಚಿದನು ದಳಪತಿಯನವನಿಪ
ತಿಲಕನೆಚ್ಚನು ನೂರು ಶರದಲಿ
ಕಳಚಿ ಕಯ್ಯೊಡನೆಚ್ಚು ಬೇಗಡೆಗಳೆದನವನಿಪನ
ಅಳುಕಲರಿವುದೆ ಸಿಡಿಲ ಹೊಯ್ಲಲಿ
ಕುಲಕುಧರವೀ ಧರ್ಮಸುತನ
ಗ್ಗಳಿಕೆಗುಪ್ಪಾರತಿಗಳಾದುವು ಶಲ್ಯನಂಬುಗಳು ೩೦

ಅರಸ ಕೇಳೈ ಮುಳಿದ ಮಾದ್ರೇ
ಶ್ವರನ ಖತಿಯೋ ಕುಪಿತ ಯಮನು
ಬ್ಬರದ ಕೋಪವೊ ಕಾಲರುದ್ರನ ಹಣೆಯ ಹೆಗ್ಗಿಡಿಯೊ
ಉರಿದನಗ್ಗದ ರೋಷದಲಿ ಹೊಗೆ
ಹೊರಳಿಗಟ್ಟಿತು ಸುಯ್ಲಿನಲಿ ಸಂ
ವರಿಸಿಕೊಳು ಕೌಂತೇಯ ಎನುತೆಚ್ಚನು ಮಹೀಪತಿಯ ೩೧

ಮುಂದಣಂಬಿನ ಮೊನೆಯನೊದೆದವು
ಹಿಂದಣಂಬುಗಳವರ ಮೊನೆಗಳ
ಹಿಂದಣಂಬಿನ ಹಿಳುಕು ಹೊಕ್ಕವು ಮುಂಚಿದಂಬುಗಳ
ಹಿಂದಣವು ಹಿಂದಿಕ್ಕಿದವು ಮಿಗೆ
ಹಿಂದಣಂಬುಗಳೆಂಜಲಿಸಿ ಬಳಿ
ಸಂದವುಳಿದಂಬುಗಳೆನಲು ಕವಿದೆಚ್ಚನವನಿಪನ ೩೨

ತೋಡಿ ನೆಟ್ಟವು ಸೀಸಕವನೊಡೆ
ದೋಡಿದವು ಕವಚದಲಿ ಕಂದುರೆಯ
ಜೋಡು ಹಕ್ಕರಿಕೆಯಲಿ ತಳಿತವು ಹಿಳುಕು ಹರಹಿನಲಿ
ಕೂಡೆ ರಥದಲಿ ಸಿಂಧದಲಿ ಮೈ
ಗೂಡಿ ಗಾಲಿಗಳಲಿ ವರೂಥದ
ಲೀಡಿರಿದವಂಬುಗಳು ಕಲಿಮಾದ್ರೇಶನೆಸುಗೆಯಲಿ ೩೩

ದೊರೆಗೆ ಬಲುಹೋ ಸಮರ ಶಲ್ಯನ
ಶರವಳೆಗೆ ಹಿಡಿ ಕೊಡೆಯನೆನಲ
ಬ್ಬರದೊಳಗೆ ಗಬ್ಬರಿಸೆ ನೆಲ ಗಾಲಿಗಳ ಘಲ್ಲಣೆಗೆ
ಸರಳ ಹೊದೆಗಳ ತುಂಬಿ ರಥ ಸಾ
ವಿರದಲಾ ಪಾಂಚಾಲಬಲವು
ಪ್ಪರಗುಡಿಯ ಸಿಂಧದ ಸಘಾಡದಲೈದಿತರಿಭಟನ ೩೪

ಪೂತುರೇ ಪಾಂಚಾಲ ಬಲ ಬಂ
ದಾತುಕೊಂಡುದೆ ಧರ್ಮಪುತ್ರನ
ಘಾತಿಯನು ಘಟ್ಟಿಸಿದರೇ ತಪ್ಪಿಸಿದನೇ ನೃಪತಿ
ಈತಗಳ ಕೊಳ್ಳೆನುತ ಶರಸಂ
ಘಾತವನು ಕವಿಸಿದನು ಮಾದ್ರೀ
ಜಾತರಡಹಾಯಿದರು ಶಲ್ಯನ ರಥದ ಸಮ್ಮುಖಕೆ ೩೫

ಮಕ್ಕಳಿರ ನಿಮಗೇಕೆ ರಣವಿದು
ಮಕ್ಕಳಾಟಿಕೆಯಾಯ್ತಲಾ ಹಿಂ
ದಿಕ್ಕಿದಿರಲಾ ದೊರೆಯ ಧೂಳಿಯ ಬೆನ್ನ ತಡೆದಿರಲಾ
ಎಕ್ಕಸರದಲಿ ನಿಮ್ಮ ರಾಯನ
ನಿಕ್ಕಿ ಭೀಮಾರ್ಜುನರಿಗೌತಣ
ವಿಕ್ಕುವೆನು ಬರಹೇಳೆನುತ ತೂಳಿದನು ಮಾದ್ರೇಶ ೩೬

ದಳಪತಿಯ ದುವ್ವಾಳಿ ಪಾಂಡವ
ಬಲವ ಕೆದರಿತು ಕಲ್ಪಮೇಘದ
ಹೊಲಿಗೆ ಹರಿದವೊಲಾಯ್ತು ಮಾದ್ರೇಶ್ವರನ ಶರಜಾಲ
ಅಳುಕದಿರಿ ಬದ್ಧರದ ಬಂಡಿಯ
ನಿಲಿಸಿ ಹರಿಗೆಯ ಪಾಠಕರು ಕೈ
ಕೊಳಲಿ ಮುಂದಣ ನೆಲನನೆನುತುಬ್ಬರಿಸಿತರಿಸೇನೆ ೩೭

ಅರಸ ಕೇಳೈ ಬಳಿಕ ಶಲ್ಯನ
ಶರಹತಿಗೆ ಬಿಚ್ಚಿದವು ಹೂಡಿದ
ಹರಿಗೆಯಿಬ್ಬಗಿಯಾದವಾ ಬದ್ಧರದ ಬಂಡಿಗಳು
ಸರಳುಗಳ ಬಳಿಸರಳು ಬೆಂಬಳಿ
ಸರಳ ಹಿಂದಣ ಸರಳುಗಳ ಪಡಿ
ಸರಳ ಸಾರದ ಸೋನೆ ಸದೆದುದು ವೈರಿವಾಹಿನಿಯ ೩೮

ಘಾಯವಡೆದನು ದ್ರುಪದಸುತ ಪೂ
ರಾಯದೇರಿನಲೋಡಿದರು ಮಾ
ದ್ರೇಯರುಬ್ಬಟೆ ಮುರಿದು ಬೆಬ್ಬಳೆವೋದನವನೀಶ
ರಾಯದಳ ದೆಸೆಗೆಟ್ಟುದೊಗ್ಗಿನ
ನಾಯಕರು ನುಗ್ಗಾಯ್ತು ಯಾದವ
ರಾಯ ಕಂಡನು ರಥವನಡಹಾಯ್ಸಿದನು ಫಲುಗುಣನ ೩೯

ಎಲೆಲೆ ಹನುಮನ ಹಳವಿಗೆಯ ರಥ
ಹೊಳೆಯುತದೆ ದಳಪತಿಗೆ ಕಾಳೆಗ
ಬಲುಹು ಬರ ಹೇಳುವುದು ಗೌತಮ ಗುರುಸುತಾದಿಗಳ
ಬಲವ ಕರೆ ಸಮಸಪ್ತಕರನಿ
ಟ್ಟಳಿಸಿ ನೂಕಲಿ ಕರ್ಣಸುತನೆಂ
ದುಲಿದು ಹೊಕ್ಕನು ನಿನ್ನ ಮಗನೈನೂರು ರಥಸಹಿತ ೪೦

ಉಲಿದು ಕೌರವ ಸರ್ವದಳ ಮುಂ
ಕೊಳಿಸಿ ನೂಕಿತು ಶಲ್ಯನನು ಪಡಿ
ತಳಿಸಿ ಹೊಕ್ಕುದು ಕರ್ಣಸುತ ಕೃಪ ಗುರುಸುತಾದಿಗಳು
ಪ್ರಳಯದಿನದಲಿ ಪುಟಿಸುವ ಸಿಡಿ
ಲಳಿದುದೆನೆ ಬಹುವಿಧದ ವಾದ್ಯದ
ಮೊಳಗುಗಳ ತುದಿ ತುಡುಕಿತಾ ಬ್ರಹ್ಮಾಂಡಮಂಡಲವ ೪೧

ಧರಣಿಪತಿ ಕೇಳ್ ಭೀಮಸೇನನ
ಕರಿಘಟೆಗಳಿಟ್ಟಣಿಸಿದವು ಮೋ
ಹರಿಸಿದವು ಸಾತ್ಯಕಿಯ ರಥವಾ ದ್ರೌಪದೀಸುತರ
ಬಿರುದ ಭಟರೌಕಿದರು ರಾಯನ
ಧುರದ ಧೀವಸಿಗಳು ನಿಹಾರದ
ಲುರವಣಿಸಿದರು ಶಲ್ಯನಂಬಿನ ಮಳೆಯ ಮನ್ನಿಸದೆ ೪೨

ತರಹರಿಸಿದುದು ಪಾರುದಳ ತಲೆ
ವರಿಗೆಯಲಿ ಮೊಗದಡ್ಡವರಿಗೆಯ
ಲರರೆ ರಾವುತೆನುತ್ತ ನೂಕಿತು ಬಿಟ್ಟ ಸೂಠಿಯಲಿ
ತುರಗದಳ ಮೊಗರಂಬದಲಿ ಮೊಗ
ವರಿಗೆಗಳಲಾರೋಹಕರು ಚ
ಪ್ಪರಿಸಿ ಚಾಚಿದರಾನೆಗಳನಾ ಶಲ್ಯನಿದಿರಿನಲಿ ೪೩

ಚೂರಿಸುವ ಮೊಗಸೂನಿಗೆಯ ಕೊ
ಲ್ಲಾರಿಗಳ ಶರಬಂಡಿಗಳ ಹೊಂ
ದೇರು ಕವಿದುವು ಕೋಲಕೋಲಾಹಲದ ತೋಹಿನಲಿ
ವೀರರುಬ್ಬಿನ ಬೊಬ್ಬೆಗಳ ಜು
ಜ್ಝಾರರೇರಿತು ಸರಳ ಧಾರಾ
ಸಾರದಲಿ ದಕ್ಕಡರು ಬಿಲ್ಲವರಾಂತರರಿಭಟನ ೪೪

ಕಡಿದು ಬಿಸುಟನು ತಲೆವರಿಗೆಗಳ
ಲಡಸಿದಾ ಪಯದಳವನೊಗ್ಗಿನ
ತುಡುಕುಗುದುರೆಯ ಖುರವ ತರಿದನು ನಗದ ನಾಟಕದ
ಗಡಣದಾನೆಯ ಥಟ್ಟನುಪ್ಪರ
ಗುಡಿಯ ರಥವಾಜಿಗಳ ರುಧಿರದ
ಕಡಲೊಳದ್ದಿದನುದ್ದಿದನು ಮಾರ್ಬಲದ ಗರ್ವಿತರ ೪೫

ಮುರಿದುದೈ ಚತುರಂಗಬಲ ನಿ
ನ್ನಿರಿತವಾವೆಡೆ ಧರ್ಮಸುತ ಕೈ
ಮರೆದಲಾ ಕಲಿಭೀಮಪಾರ್ಥರ ಬಿಂಕ ಬೀತುದಲಾ
ಮೆರೆಯಿ ಮದವನು ಮಾವತನವದು
ಹೊರಗಿರಲಿ ಸಹದೇವ ನಕುಲರ
ನರಿಯಬಹುದಿನ್ನೆನುತ ಹೊಕ್ಕನು ಶಲ್ಯ ಪರಬಲವ ೪೬

ಸುರನದೀಸುತನೆಸುಗೆ ದ್ರೋಣನ
ಶರಚಮತ್ಕೃತಿ ಕರ್ಣನಂಬಿನ
ಹರಹು ಹೇರಿತು ದಳಪತಿಯ ಶರಸೋನೆ ಸಾರವಲಾ
ದೊರೆಯ ಸುಯ್ದಾನದಲಿ ಸಾತ್ಯಕಿ
ಯಿರಲಿ ಧೃಷ್ಟದ್ಯುಮ್ನ ಭೀಮಾ
ದ್ಯರ ನಿರೀಕ್ಷಿಸ ಹೇಳೆನುತ ತಾಗಿದನು ಕಲಿಪಾರ್ಥ ೪೭

ಅರಸ ಕೇಳೈ ಶಲ್ಯ ಪಾರ್ಥರ
ಶರ ವಿಧಾನವನವರ ಬಾಣೋ
ತ್ಕರವನವರಂಬುಗಳ ಬಹಳಾಡಂಬರಧ್ವನಿಯ
ನಿರುಪಮಾಸ್ತ್ರಪ್ರೌಢಿಯನು ದು
ರ್ಧರ ಶಿಳೀಮುಖ ಸರ್ಗಬಂಧ
ಸ್ಫುರಣವನು ಹಿಂದೀಸು ದಿನ ಕಾಣೆನು ರಣಾಗ್ರದಲಿ ೪೮

ಎಸುವನರ್ಜುನನರ್ಜುನಾಸ್ತ್ರವ
ಕುಸುರಿದರಿವನು ಶಲ್ಯ ಶಲ್ಯನ
ವಿಶಿಖವನು ಮುರಿವನು ಧನಂಜಯನಾ ಧನಂಜಯನ
ಮಸಕವನು ಮಾದ್ರೇಶನುರೆ ರೆಝೊಂ
ಪಿಸುವನಾ ಮಾದ್ರೇಶನಂಬಿನ
ಹಸರವನು ಹರೆಗಡಿವನರ್ಜುನನಗಣಿತಾಸ್ತ್ರದಲಿ ೪೯

ಕಂಡನೀ ಶಲ್ಯಾರ್ಜುನರ ಕೋ
ದಂಡಸಾರಶ್ರುತಿರಹಸ್ಯದ
ದಂಡಿಯನು ಕುರುರಾಯ ಕೈವೀಸಿದನು ತನ್ನವರ
ಗಂಡುಗಲಿಗಳೊ ವೀರಸಿರಿಯುಳಿ
ಮಿಂಡರೊ ತನಿನಗೆಯ ಬಿರುದಿನ
ಭಂಡರೋ ನೀವಾರೆನುತ ಮೂದಲಿಸಿದನು ಭಟರ ೫೦

ದಳವ ಕರೆ ದಳಪತಿಗೆ ಕಾಳೆಗ
ಬಲುಹು ಪಾರ್ಥನ ಕೂಡೆ ಗುರುಸುತ
ನಳವಿಗೊಡಲಿ ಸುಶರ್ಮ ತಾಗಲಿ ಭೋಜ ಗೌತಮರು
ನಿಲಲಿ ಸುಭಟರು ಜೋಡಿಯಲಿ ಪರ
ಬಲಕೆ ಜಾರುವ ಜಯಸಿರಿಯ ಮುಂ
ದಲೆಯ ಹಿಡಿಹಿಡಿಯೆನುತ ಹೆಕ್ಕಳಿಸಿದನು ಕುರುರಾಯ ೫೧

ನೂಕಿದರು ಶಲ್ಯಂಗೆ ಪಡಿಬಲ
ದಾಕೆವಾಳರು ಗುರುಸುತಾದ್ಯರು
ತೋಕಿದರು ಶರಜಾಳವರ್ಜುನನಂಬಿನಂಬುಧಿಯ
ಬೀಕಲಿನ ಭಟರುಬ್ಬಿದರೆ ಸು
ವ್ಯಾಕುಲರು ತುಬ್ಬಿದರೆ ತಪ್ಪೇ
ನೀ ಕಳಂಬವ ಕಾಯ್ದುಕೊಳ್ಳೆನುತೆಚ್ಚನಾ ಪಾರ್ಥ ೫೨

ಮುರಿಯೆಸುತ ಮಾದ್ರೇಶ್ವರನ ಹೊ
ಕ್ಕುರುಬಿದನು ಗುರುಸುತನ ಸೂತನ
ನಿರಿದು ಸಮಸಪ್ತಕರ ಸೋಲಿಸಿ ಕೃಪನನಡಹಾಯ್ಸಿ
ತರುಬಿದನು ಕುರುಪತಿಯನರ್ಜುನ
ನೊರಲಿಸಿದನೀ ಸೈನ್ಯ ಸುಭಟರ
ನೆರವಣಿಗೆ ನಿಪ್ಪಸರದಲಿ ಮುಸುಕಿತು ಧನಂಜಯನ ೫೩

ಅರಸ ಕೇಳಿತ್ತಲು ಯುಧಿಷ್ಠಿರ
ನರಪತಿಯನರಸಿದನು ಮಾದ್ರೇ
ಶ್ವರನು ರಾವುಠಿಯೆಸುಗೆಯಲಿ ಮುಸುಕಿದನು ಧರ್ಮಜನ
ಧರೆಗೆ ಕಾಮಿಸಿದೈ ಸುಯೋಧನ
ನರಸಿಯಲ್ಲಾ ಧಾತ್ರಿ ನಿಮ್ಮೆ
ಲ್ಲರಿಗೆ ಹುದುನೆಲನಲ್ಲವೆಂದೆನುತೆಚ್ಚನಾ ಶಲ್ಯ ೫೪

ಮಾವ ಮಾಯಾಡಂಬರದ ದು
ರ್ಭಾವವೇತಕೆ ಕೌರವನೊಳೆಮ
ಗೀ ವಸುಧೆ ಹುದುವಲ್ಲ ನೆಲನೇಕಾಧಿಪತ್ಯವಲೆ
ನೀವು ಕೌರವ ಸರ್ವದಳದ ದು
ರಾವಹರಲೇ ಬಾಣಸೃಷ್ಟಿ ಕೃ
ತಾವಧಾನವ ತೋರೆನುತ ನೃಪನೆಚ್ಚು ಬೊಬ್ಬಿರಿದ ೫೫

ಬರಿಯ ಬೊಬ್ಬಾಟವೊ ಶರಾವಳಿ
ಯಿರಿಗೆಲಸವೇನುಂಟೊ ಧರಣಿಯ
ಲೆರಕ ನಿಮ್ಮೈವರಿಗೆ ಗಡ ದ್ರೌಪದಿಗೆ ಸಮವಾಗಿ
ಹೊರಗು ಗಡ ಕುರುರಾಯನೀಗಳೊ
ಮರುದಿವಸವೋ ಸಿರಿಮುಡಿಗೆ ನೀ
ರೆರೆವ ಪಟ್ಟವದೆಂದು ನಿಮಗೆನುತೆಚ್ಚನಾ ಶಲ್ಯ ೫೬

ಕಡಿದು ಬಿಸುಟನು ಶಲ್ಯನಸ್ತ್ರವ
ನೆಡೆಗೊಡದೆ ಕೂರಂಬುಗಳನಳ
ವಡಿಸಿದನು ನೃಪವರನ ಶರಸಂತತಿಯ ಸಂತೈಸಿ
ಒಡನೊಡನೆ ಕೈಮಾಡಿದನು ಕೈ
ಗಡಿಯನಂಬಿನ ಧಾರೆ ದಳ್ಳಿಸಿ
ಕಿಡಿಗೆದರಿದವು ನೃಪನ ರಥ ಸಾರಥಿ ಹಯಾಳಿಯಲಿ ೫೭

ಗೆಲಿದನೋ ಮಾದ್ರೇಶನವನಿಪ
ತಿಲಕನನು ಫಡ ಧರ್ಮಸುತನೀ
ದಳಪತಿಯನದ್ದಿದನು ಪರಿಭವಮಯ ಸಮುದ್ರದಲಿ
ಅಳುಕಿದನು ನೃಪನೀ ಬಲಾಧಿಪ
ನುಲುಕನಂಜಿದನೆಂಬ ಲಗ್ಗೆಯ
ಲಳಿ ಮಸಗಿ ಮೈದೋರಿತಾಚೆಯ ಸೇನೆ ಸಂದಣಿಸಿ ೫೮

ನೆಲ ಬಿರಿಯಲಳ್ಳಿರಿವ ವಾದ್ಯದ
ಕಳಕಳದ ಕೊಲ್ಲಣಿಗೆಯಲಿ ಮುಂ
ಕೊಳಿಸಿದರು ಸಹದೇವ ಸಾತ್ಯಕಿ ನಕುಲ ಸೃಂಜಯರು
ದಳದ ಪದಹತಿಧೂಳಿಯಲಿ ಕ
ತ್ತಲಿಸೆ ದೆಸೆ ಪಾಂಚಾಲಬಲವಿ
ಟ್ಟಳಿಸಿ ನೂಕಿತು ಧರ್ಮಪುತ್ರನ ರಣದ ಚೂಣಿಯಲಿ ೫೯

ಸರ್ಬಲಗ್ಗೆಯಲರರೆ ಪಾಂಡವ
ಸರ್ಬದಳ ದಳಪತಿಯ ರೆಥೊಂಪಿಸ
ಲೊಬ್ಬನೊದಗಿದಡೇನಹುದು ಕವಿ ನೂಕು ನೂಕೆನುತ
ಬೊಬ್ಬಿಡಲು ಕುರುರಾಯ ನೀ ಬಲ
ದಬ್ಬರಣೆ ವಾರಿಜಭವಾಂಡವ
ಗಬ್ಬರಿಸೆ ಘಾಡಿಸಿತು ಶಲ್ಯನ ರಥದ ಬಳಸಿನಲಿ ೬೦

ಸೆಳೆದು ಹೊಯ್ದಾಡಿದುದು ಚಾತು
ರ್ಬಲ ಛಡಾಳಿಸಿ ವಿವಿಧ ಶಸ್ತ್ರಾ
ವಳಿಯ ಧಾರಾಸಾರದಲಿ ಹೊನಲೆದ್ದುದರುಣಜಲ
ಉಳಿದರಿಬ್ಬರು ದೊರೆಗಳೆನೆ ಮು
ಮ್ಮುಳಿತವಾದುದು ಸೇನೆ ನೃಪತಿಯ
ಹಳಚಿದನು ಮಾದ್ರೇಶನಾವೆಡೆ ಧರ್ಮಸುತನೆನುತ ೬೧

ಮತ್ತೆ ತರುಬಿದನವನಿಪನನಿದು
ಜೊತ್ತಿನಾಹವವಲ್ಲಲೇ ಮಿಗೆ
ಹೊತ್ತ ಹೊರಿಗೆಯ ನೆರವಣಿಗೆ ಸೇನಾಧಿಪತ್ಯವಲೆ
ತೆತ್ತಿಸಿದನಂಬಿನಲಿ ಜೋಡಿನ
ಹತ್ತರಿಕೆಯಲಿ ಚಿಪ್ಪನೊಡೆದೊಳು
ನೆತ್ತರೋಕುಳಿಯಾಡಿದುವು ಮಾದ್ರೇಶನಂಬುಗಳು ೬೨

ಏನ ಹೇಳುವೆನರಸ ಕುಂತೀ
ಸೂನುವೇ ಕಿರುಕುಳನೆ ಶಲ್ಯನ
ನೂನ ಶರಜಾಲದಲಿ ನೊಂದನು ಬಹಳ ಧೈರ್ಯದಲಿ
ಭಾನುವಿನ ತಮದೊದವಿದನುಸಂ
ಧಾನದಂತಿರೆಯಹಿತಭಟನ ಸ
ಘಾನತೆಯನೆತ್ತಿದವು ಕುತ್ತಿದವಂಬು ದಳಪತಿಯ ೬೩

ಮೂರನೆಯ ಸಂಧಿ

ಸೂ. ಸವೆದುದಗ್ಗದ ಪಾಂಡುಸುತ ಕೌ
ರವ ಬಲಾಂಬುಧಿ ಧರ್ಮತನುಜನ
ನವಗಡಿಸಿ ಸಮರದಲಿ ಮಡಿದನು ಮಾದ್ರಭೂಪಾಲ

ಕೇಳು ಧೃತರಾಷ್ಟ್ರಾವನಿಪ ಭೂ
ಪಾಲ ಶಲ್ಯರ ಸಮರಕಿವರನು
ಕೂಲವಾದರಲೈ ಕೃಪಾದಿಗಳತ್ತಲಾಚೆಯಲಿ
ಮೇಳವಿಸಿತರ್ಜುನ ನಕುಲ ಪಾಂ
ಚಾಲ ಬಲಭೀಮಾದಿಗಳು ಪದ
ಧೂಳಿಯಲಿ ಜಗ ಮುಳುಗೆ ಜೋಡಿಸಿ ಜಡಿದುದುಭಯಬಲ ೧

ಕೆದರಿದನು ಕಲಿಭೀಮ ಬಲವಂ
ಕದಲಿ ಸಾತ್ಯಕಿ ನಕುಲರೆಡವಂ
ಕದಲಿ ಚೂಣಿಗೆ ಚಿಮ್ಮಿದರು ಪಾಂಚಾಲನಾಯಕರು
ಮದವಮುಖರನಿಕ್ಕಿದನು ಬಾಣೌ
ಘದಲಿ ಫಲುಗುಣನೊಂದು ಕಡೆಯಲಿ
ಸದೆದು ಸವರಿದರೊಂದು ಕಡೆಯಲಿ ದ್ರೌಪದೀಸುತರು ೨

ಕ್ಷಿತಿಪ ಚಿತ್ತೈಸೀಚೆಯಲಿ ಗುರು
ಸುತ ಸುಶರ್ಮಕ ಶಲ್ಯ ನಿನ್ನಯ
ಸುತನು ಕೃತವರ್ಮನು ಕೃಪಾಚಾರ್ಯಾದಿಗಳು ಮಸಗಿ
ಘೃತಸಮುದ್ರದ ಸೆರಗ ಸೋಂಕಿದ
ಹುತವಹನ ಸೊಂಪಿನಲಿ ವೈರಿ
ಪ್ರತತಿಯನು ತರುಬಿದರು ತರಿದರು ಸರಳ ಸಾರದಲಿ ೩

ಕೆಣಕಿದಡೆ ಗುರುಸುತನನಡಹಾ
ಯ್ದು ಣೆದನಂಬಿನಲರ್ಜುನನ ಮಾ
ರ್ಗಣಮಹಾರಣ್ಯದಲಿ ನಡೆದುದು ಕಡಿತ ಗುರುಸುತನ
ರಣವಿಶಾರದರಹಿರಲೇ ನೀ
ವಣಕವೇತಕೆ ರಾಜಗುರುಗಳು
ಸೆಣಸುವರೆ ಸೈರಿಸಿರೆ ನೀವೆನುತೆಚ್ಚನಾ ಪಾರ್ಥ ೪

ಮೊಗೆದವಶ್ವತ್ಥಾಮನೆಚ್ಚಂ
ಬುಗಳನರ್ಜುನನಂಬುಪಾರ್ಥನ
ಬಿಗಿದವಾ ನಿಮಿಷದಲಿ ಭಾರದ್ವಾಜ ಶರಜಾಲ
ತಗಡುಗಿಡಿಗಳ ಸೂಸುವುರಿಧಾ
ರೆಗಳ ಘೃತಲೇಪನದ ಬಂಧದ
ಹೊಗರುಗಣೆ ಹೂಳಿದವು ಗುರುಸುತನಂಬಿನಂಬುಧಿಯ ೫

ಅರಸ ಕೇಳಡಹಾಯ್ದು ಪಾರ್ಥನ
ವರರಥವ ಹಿಂದಿಕ್ಕಿ ಪವನಜ
ನುರವಣಿಸಿದನು ನಕುಲ ಸಾತ್ಯಕಿ ಸಹಿತ ಗುರುಸುತನ
ಸರಳ ಸರಿವಳೆಗಳ ಸಘಾಡದ
ಲರಿಭಟನು ಸವೆದನು ಮಹೋಗ್ರದ
ಧುರವ ಕಂಡನು ನೃಪತಿ ಬಂದನು ಬಿಟ್ಟ ಸೂಠಿಯಲಿ ೬

ರಾಯ ಹೊಕ್ಕನು ಭೀಮಸೇನನ
ದಾಯ ಬಲುಹೋ ಧರ್ಮಪುತ್ರನ
ದಾಯವಲ್ಲಿದು ನೂಕೆನುತ ಕೃತವರ್ಮಗೌತಮರು
ಸಾಯಕದ ಮಳೆಗರೆದು ಕೌರವ
ರಾಯನನು ಹಿಂದಿಕ್ಕಿ ವೇಢೆಯ
ವಾಯುಜನ ವಂಗಡವ ಮುರಿದರು ತರಿದರರಿಬಲವ ೭

ಪಡಿಬಲಕೆ ಹೊಕ್ಕುದು ತ್ರಿಗರ್ತರ
ಗಡಣ ಕೃಪ ಕೃತವರ್ಮರಿಗೆ ಸಂ
ಗಡಿಗನಶ್ವತ್ಥಾಮನೀ ಹೇರಾಳ ದಳಸಹಿತ
ಕೊಡಹಿದರು ಪಾಂಡವಬಲವನವ
ಗಡಿಸಿದರು ಪವಮಾನಜನನ
ಕ್ಕುಡಿಸಿ ಬೆಬ್ಬಳೆವೋಯ್ತು ಭೀಮನ ಭಾರಣೆಯ ಭಟರು ೮

ಘಡ ಎನುತ ಪಾಂಚಾಲಬಲ ಸಂ
ಗಡಿಸಿತನಿಲಜನೊಡನೆ ಸೃಂಜಯ
ರೆಡೆಯುಲಡಹಾಯಿದರು ಸುತ ಸೋಮಾದಿಗಳು ಸಹಿತ
ಕಡೆವಿಡಿದು ಕಲಿಪಾರ್ಥನಂಬಿನ
ವಡಬನೆದ್ದುದು ಕುರುಬಲದ ಹೆ
ಗ್ಗಡಲು ಬರತಂದು ಹೇಳಲೇನದ ಭೂಪ ಕೇಳೆಂದ ೯

ಆ ಸಮಯದಲಿ ಬಹಳ ಶೌರ್ಯಾ
ವೇಶದಲಿ ನಿನ್ನಾತ ನೂಕಿದ
ನಾ ಶಕುನಿಯೈವತ್ತು ಸಾವಿರ ತುರಗದಳ ಸಹಿತ
ಕೇಸುರಿಯ ಕಬ್ಬೊಗೆಯವೊಲು ನಿ
ಟ್ಟಾಸಿನಾಯುಧದಾನೆಗಳು ಕೈ
ವೀಸುವಲ್ಲಿಂ ಮುನ್ನ ಮೊಗೆದುವು ವೈರಿಮೋಹರವ ೧೦

ಗಜದಳದ ಘಾಡಿಕೆಗೆ ವಾಜಿ
ವ್ರಜದ ವೇಢೆಗೆ ಭೀಮನೇ ಗಜ
ಬಜಿಸುವನೆ ಹೊಡೆಸೆಂಡನಾಡಿದನಹಿತ ಮೋಹರವ
ಗುಜರು ಗುಲ್ಮದ ಕುಂಜರಾಶ್ವ
ವ್ರಜದ ಮೊಳೆಯೊಣಗಿದುದು ಪವಮಾ
ನಜ ಪರಾಕ್ರಮಶಿಖಿಯ ಝಳ ಝೊಂಪಿಸಿತು ನಿಮಿಷದಲಿ ೧೧

ಅಳಿದುದೈನೂರಾನೆ ಸಾವಿರ
ಬಲುಗುದುರೆ ರಥ ಮೂರು ಸಾವಿರ
ನೆಲಕೆ ಕೈವರ್ತಿಸಿತು ಭೀಮನ ಹೊಯ್ಲ ಹೋರಟೆಗೆ
ಬಿಲು ಹರಿಗೆ ಸಬಳದ ಪದಾತಿಯ
ತಲೆಯ ತೊಡಸಿದನೆಂಟು ಲಕ್ಕವ
ನುಳಿದ ಬಲವೋಲೈಸುತಿರ್ದುದು ಘನ ಪಲಾಯನವ ೧೨

ತಡೆದನಶ್ವತ್ಥಾಮ ಭೀಮನ
ಕಡುಹನಾ ಸಹದೇವ ನಕುಲರ
ನಡುಗಿಸಿದನುಡುಗಿಸಿದನಾಟೋಪವನು ಪವನಜನ
ಇಡಿದುದಂಬರವಂಬಿನಲಿ ಕೈ
ಗಡಿಯನಂಬಿನ ಲಕ್ಷ್ಯಭೇದವ
ನುಡಿಯಬಲ್ಲವನಾರು ಗುರುನಂದನನ ಸಮರದಲಿ ೧೩

ಪವನಜನನೆಂಟಂಬಿನಲಿ ಪಾಂ
ಡವಸುತರನೈವತ್ತರಲಿ ಯಾ
ದವನನಿಪ್ಪತ್ತಂಬಿನಲಿ ಮಾದ್ರೀಕುಮಾರಕರ
ಕವಲುಗೋಲಿಪ್ಪತ್ತರಲಿ ಮುರಿ
ದವಗಡಿಸಿ ಪಾಂಚಾಲ ಸೃಂಜಯ
ನಿವಹವನು ನೂರಂಬಿನಲಿ ಕೆಡೆಯೆಚ್ಚು ಬೊಬ್ಬಿರಿದ ೧೪

ಏನ ಹೇಳುವೆ ಗಜಘಟಾಪ್ರತಿ
ಮಾನದಲಿ ಕೋದಂಬುಗಳು ಹಿಂ
ಡಾನೆಗಳನೇಳೆಂಟನೊದೆದೋಡಿದವು ಪಂಚಕವ
ಭಾನು ರಶ್ಮಿಗಳಂಧಕಾರದ
ಮಾನಗರ್ವವ ಮುರಿವವೊಲು ಗುರು
ಸೂನುವಿನ ಶರ ಸವರಿದವು ಕರಿಘಟೆಯ ಬಲುಮೆಳೆಯ ೧೫

ತಾಗಿದವು ಕಂದದಲಿ ನಾಳಿಕೆ
ಗಾಗಿ ಹೊರವಂಟಶ್ವನಿಕರವ
ನೀಗಿದವು ಶರವೊಂದು ಸಾವಿರ ರಥಹಯಾವಳಿಯ
ಬೀಗಿದವು ಕಾಲಾಳ ಕಬಳಿಸಿ
ತೇಗಿದವು ಚತುರಂಗವನು ವಿನಿ
ಯೋಗಿಸಿದವಂತಕನ ಮನೆಗಂಬುಗಳು ಗುರುಸುತನ ೧೬

ಕಡಿವಡೆದುದಿನ್ನೂರು ಗಜ ಧರೆ
ಗುಡಿದು ಬಿದ್ದುದು ತೇರು ಸಾವಿರ
ವಡಗುದುರೆಯಾಯ್ತಶ್ವಚಯ ಸಾವಿರದ ಮೂನೂರು
ಕಡುಗಲಿಗಳೆಳರುವತ್ತು ಸಾವಿರ
ಹೊಡಲನಿಕ್ಕಿತು ಪಾಯದಳವು
ಗ್ಗಡದ ಡಾವರ ಡಿಳ್ಳವಾದುದು ವೈರಿಸುಭಟರಿಗೆ ೧೭

ಮತ್ತೆ ಕವಿದುದು ಪಾಂಡುಬಲವರು
ವತ್ತು ಸಾವಿರ ಕುದುರೆ ನೂರಿ
ಪ್ಪತ್ತು ಗಜರಥ ನೂರ ಮೀರಿತು ಲಕ್ಕಪಾಯದಳ
ಸತ್ತಿಗೆಯ ಸಾಲಿನಲಿ ಧರಣಿಯ
ಕಿತ್ತು ಮಗುಚುವ ವಾದ್ಯರಭಸದ
ಲೆತ್ತಿ ನೂಕಿತು ಗುರುತನೂಜನ ರಥದ ಸಮ್ಮುಖಕೆ ೧೮

ಇತ್ತ ಹೇಳಿಕೆಯಾಯ್ತು ಹಯವಿ
ಪ್ಪತ್ತು ಸಾವಿರ ದಂತಿಘಟೆಯೈ
ವತ್ತು ನಾನೂರೇಳು ರಥ ಸಾವಿರದ ನಾನೂರು
ತೆತ್ತಿಗರು ಕಾಲಾಳು ಲಕ್ಕವು
ಹತ್ತಿತಲ್ಲಿಯ ವಾದ್ಯರವ ಕೀ
ರಿತ್ತು ಕಮಲಭವಾಂಡ ವಿಪುಲ ಕಟಾಹಖರ್ಪರವ ೧೯

ಉರವಣಿಸಿತಿದು ಗುರುಸುತನ ಹಿಂ
ದಿರಿಸಿ ಪರಬಲದಭಿಮುಖಕೆ ಮೋ
ಹರಿಸಿ ನಿಂದುದು ಕಂಡನಿತ್ತಲು ಶಲ್ಯನಾ ಬಲವ
ಧುರಕೆ ನಾವಿರೆ ಸೇನೆಯುಪಸಂ
ಹರಿಸಬಹುದೇ ದ್ರೋಣ ಭೀಷ್ಮಾ
ದ್ಯರಿಗೆ ನಗೆಗೆಡೆ ನಾವಹೆವೆ ತೆಗೆಯೆನುತ ನಡೆತಂದ ೨೦

ದಳವ ತೆಗೆತೆಗೆ ತಾನಿರಲು ಕುರು
ಬಲಕೆ ಬೀಯವೆ ಕೌರವೇಂದ್ರನ
ಕೆಲಬಲದ ಸುಯಿಧಾನದಲಿ ಕೃಪಗುರುಸುತಾದಿಗಳ
ನಿಲಲಿ ಶಕುನಿಯು ತುರಗದಳ ಹಿ
ನ್ನೆಲೆಗೆ ಹೋಗಲಿ ರಾಯದಳವೆ
ಮ್ಮಳವ ನೋಡುತ್ತಿರಲಿಯೆಂದನು ಶಲ್ಯ ಕುರುಪತಿಗೆ ೨೧

ಕೇಳು ಕೃಪ ಕೃತವರ್ಮ ಗುರುಸುತ
ಕೇಳು ಶಕುನಿ ಸುಶರ್ಮ ಸಾಲ್ವನೃ
ಪಾಲ ರಾಯನ ಮಂತ್ರಿ ಸಚಿವ ಪಸಾಯ್ತರಾದವರು
ಕೇಳಿರೈ ಭೀಷ್ಮಾದಿ ಸುಭಟರ
ಕಾಳೆಗವ ಕಂಡಿರಿ ಮದೀಯ ಕ
ರಾಳ ಕದನೋತ್ಸವವ ನೋಡುವುದೆಂದನಾ ಶಲ್ಯ ೨೨

ತರಿಸಿ ಕಾಂಚನಮಯ ರಥವ ಸಂ
ವರಿಸಿದನು ಟೆಕ್ಕೆಯವನೆತ್ತಿಸಿ
ಸರಳ ತುಂಬಿದ ಬಂಡಿಗಳ ಕೆಲಬಲಕೆ ಜೋಡಿಸಿದ
ಬಿರುದನೊದರುವ ಪಾಠಕರ ಮೋ
ಹರಕೆ ಮಣಿಕಾಂಚನವ ಮೊಗೆದಿ
ತ್ತರರೆ ಕರೆಯೋ ಧರ್ಮಜನನೆಂದುಬ್ಬಿದನು ಶಲ್ಯ ೨೩

ರಾಯ ನಿಲುವನೊ ಮೇಣು ಪಾರ್ಥನೊ
ಸಾಯುಸುತನೋ ನಿಮ್ಮ ಮೂವರೊ
ವಾಯುಧವ ಕೊಂಡಾರು ಹೊಕ್ಕರು ನಿಲುವೆನವರೊಡನೆ
ಳಾಯಕರು ಮಿಕ್ಕವರೊಡನೆ ಬಿಲು
ನಾಯಕವನೊಡ್ಡಿದಡೆ ಕೌರವ
ರಾಯನಾಣೆಯೆನುತ್ತ ಮದವೇರಿದನು ಕಲಿಶಲ್ಯ ೨೪

ಬೆರಳ ತುಟಿಗಳ ಬೊಬ್ಬೆ ಮಿಗಲ
ಬ್ಬರಿಸಿದವು ನಿಸ್ಸಾಳತತಿ ಜ
ರ್ಝರ ಮೃದಂಗದಪಣಹ ಪಟಹದ ಗೌರುಗಹಳೆಗಳ
ಉರು ರಭಸವಳ್ಳಿರಿಯೆ ರಥಚೀ
ತ್ಕರಣೆ ರಥಹಯ ಹೇಷಿತದ ನಿ
ಷ್ಠುರ ನಿನಾದದಲೌಕಿ ಹೊಕ್ಕನು ಶಲ್ಯನಾಹವವ ೨೫

ದಳಪತಿಯ ಸುಮ್ಮಾನಮುಖ ಬೆಳ
ಬೆಳಗುತದೆ ಗಂಗಾಕುಮಾರನ
ಕಳಶಜನ ರಾಧಾತನೂಜನ ರಂಗಭೂಮಿಯಿದು
ಕಳನನಿದನಾಕ್ರಮಿಸುವಡೆ ಮೆ
ಗ್ಗಳೆಯ ಮಾದ್ರಮಹೀಶನಲ್ಲದೆ
ಕೆಲರಿಗೇನಹುದೆನುತೆ ಕೊಂಡಾಡಿತ್ತು ಕುರುಸೇನೆ ೨೬

ಪೂತು ಮಝರೇ ಶಲ್ಯ ಹೊಕ್ಕನೆ
ಸೂತಜನ ಹರಿಬದಲಿ ವೀರ
ವ್ರಾತಗಣನೆಯೊಳೀತನೊಬ್ಬನೆ ಹಾ ಮಹಾದೇವ
ಧಾತುವೊಳ್ಳಿತು ದಿಟ್ಟನೈ ನಿ
ಭೀತಗರ್ವಿತನಿವನೆನುತ ಭಟ
ರೀತನನು ಹೊಗಳಿದರು ಸಾತ್ಯಕಿ ಸೋಮಕಾದಿಗಳು ೨೭

ತಡೆದು ನಿಂದನು ಪರಬಲವ ನಿ
ಮ್ಮೊಡೆಯನಾವೆಡೆ ಸೇನೆ ಕದನವ
ಕೊಡಲಿ ಕೊಂಬವನಲ್ಲ ಕೈದುವ ಸೆಳೆಯೆನುಳಿದರಿಗೆ
ಪೊಡವಿಗೊಡೆಯನು ಕೌರವೇಶ್ವರ
ನೊಡನೆ ಸಲ್ಲದು ಗಡ ಶರಾಸನ
ವಿಡಿಯ ಹೇಳಾ ಧರ್ಮಜನನೆಂದುರುಬಿದನು ಶಲ್ಯ ೨೮

ಚೆಲ್ಲಿತದು ನಾನಾಮುಖಕೆ ನಿಂ
ದಲ್ಲಿ ನಿಲ್ಲದೆ ಸೃಂಜಯಾದ್ಯರ
ನಲ್ಲಿ ಕಾಣೆನು ಸೋಮಕರ ಪಾಂಚಾಲ ಮೋಹರವ
ಕೆಲ್ಲೆಯಲಿ ಭೀಮಾರ್ಜುನರು ಬಲು
ಬಿಲ್ಲನೊದರಿಸೆ ಕದನಚೌಪಟ
ಮಲ್ಲ ತಾನಿದಿರಾಗಿ ನಿಂದನು ಪಾಂಡವರ ರಾಯ ೨೯

ಜೀಯ ಬುಧನ ಪುರೂರವನ ಸುತ
ವಾಯುವಿನ ನಹುಷನ ಯಯಾತಿಯ
ದಾಯಭಾಗದ ಭೋಗನಿಧಿಯವತರಿಸಿದೈ ಧರೆಗೆ
ಜೇಯವೆನಿಸಿದೆ ಜೂಜಿನಲಿ ರಣ
ಜೇಯನಹನೀ ಕೌರವನು ನಿ
ನ್ಯಾಯತಿಯ ಸಂಭಾವಿಸೆಂದುದು ವಂದಿಜನಜಲಧಿ ೩೦

ಹರಿಗೆ ಹೊಡವಂಟಸ್ತ್ರ ಶಿಕ್ಷಾ
ಗುರುವ ಮನದಲಿ ನೆನೆದು ಹೊಸ ಬಿಲು
ದಿರುವನೇರಿಸಿ ಮಿಡಿದು ನಿಜ ಸಾರಥಿಯ ಬೋಳೈಸಿ
ವರ ರಥವ ನೂಕಿದನು ಪವನಜ
ನರ ನಕುಲ ಸಹದೇವ ಸಾತ್ಯಕಿ
ಬರಲು ಬಲನೆಡವಂಕದಲಿ ನರನಾಥನಿದಿರಾದ ೧೩

ಮಾವನವರೇ ನಿಮ್ಮ ಹಿಂಸೆಗೆ
ನಾವು ಕಡುಗೆವು ಕ್ಷತ್ರಜಾತಿಯ
ಜೀವನವಲೇ ಕಷ್ಟವಿದು ಕಾರ್ಪಣ್ಯತರವಾಗಿ
ನೀವು ಸೈರಿಸಬೇಕು ನಮ್ಮ ಶ
ರಾವಳಿಯನೆನುತವನಿಪತಿ ಬಾ
ಣಾವಳಿಯ ಕೆದರಿದನು ಸೇನಾಪತಿಯ ಸಮ್ಮುಖಕೆ ೩೨

ನಿನಗೆ ಮಾತುಳರಾವು ಮಾಣಲಿ
ಮುನಿಯೆಮಗೆ ಮೊರೆಯಲ್ಲ ದುಶ್ಶಾ
ಸನ ಜಯದ್ರಥರಲ್ಲಲಾ ಸಂಬಂಧಿಗಳು ನಿನಗೆ
ಜನಪ ಧರ್ಮದ ಹಿಂಸೆ ಬಂದುದು
ನಿನಗೆ ಸಾಕದನಾಡಲೇತಕೆ
ಮನದ ಗರ್ವದ ಗಾಢವೈಸೆನುತೆಚ್ಚನಾ ಶಲ್ಯ ೩೩

ಅರಸ ಕೇಳ್ ಶಲ್ಯನ ಯುಧಿಷ್ಠಿರ
ಧರಣಿಪನ ಸಂಗ್ರಾಮವಂದಿನ
ಸುರನದೀನಂದನನ ದ್ರೋಣನ ಸೂತಸಂಭವನ
ನರನ ಭೂರಿಶ್ರವನ ಭೀಮನ
ಕುರುಪತಿಯ ವೃಷಸೇನ ಸೌಭ
ದ್ರರ ಸಮಗ್ರಾಹವವ ಮರಸಿತು ಹೇಳಲೇನೆಂದ ೩೪

ದಿಟ್ಟನೈ ಭೂಪತಿಗಳಲಿ ಜಗ
ಜಟ್ಟಿಯೈ ನಿನಗಸ್ತ್ರವಿದ್ಯವ
ಕೊಟ್ಟವನ ನಾ ಬಲ್ಲೆನದನಿನ್ನಾಡಿ ಫಲವೇನು
ತೊಟ್ಟ ಜೋಹದ ವಾಸಿಯೆಂಬುದ
ಬಿಟ್ಟು ನಮಗೊಡ್ಡವುದು ನಿನ್ನೊಡ
ವುಟ್ಟಿದರನಿಬ್ಬರನೆನುತ ತೆಗೆದೆಚ್ಚನಾ ಶಲ್ಯ ೩೫

ಮಾವ ಭೀಮಾರ್ಜುನರ ಭಾರಣೆ
ಗಾವ ನಿಲುವನು ಸಾಕದಂತಿರ
ಲೀ ವಿಚಿತ್ರ ಕಳಂಬ ಖಂಡನ ಪಂಡಿತತ್ವವನು
ನೀವು ತೋರಿರೆ ಸಾಕು ಸಾಮ
ರ್ಥ್ಯಾವಲಂಬನವುಳ್ಳಡೀ ಶ
ಸ್ತ್ರಾವಳಿಯ ಸೈರಿಸಿಯೆನುತ ಯಮಸೂನು ತೆಗೆದೆಚ್ಚ ೩೬

ಧರಣಿಪತಿಯಂಬುಗಳನೆಡೆಯಲಿ
ತರಿದು ತುಳುಕಿದನಂಬಿನುಬ್ಬಿನ
ಗರಿಯ ಗಾಳಿಯ ದಾಳಿ ಪೈಸರಿಸಿದುದು ಪರ್ವತವ
ಮೊರೆವ ಕಣೆ ಮಾರ್ಗಣೆಗಳನು ಕ
ತ್ತರಿಸಿದವು ಬಳಿಯಂಬುಗಳು ಪಡಿ
ಸರಳ ತೂಳಿದಡೆಚ್ಚರೆಚ್ಚರು ಮೆಚ್ಚಲುಭಯಬಲ ೩೭

ಸೈರಿಸಾದಡೆಯೆನುತ ಮುಳಿದು ವ
ಹೀರಮಣ ಮದ್ರಾಧಿಪನನೆ
ಚ್ಚಾರಿದನು ಮಗುಳೆಚ್ಚು ಪುನರಪಿಯೆಚ್ಚು ಮಗುಳೆಸಲು
ಕೂರಲಗ ಸೀಸಕವ ಕವಚವ
ಹೋರುಗಳೆದವು ನೆತ್ತರಿನ ಬಾ
ಯ್ಧಾರೆಗಳ ತೋರಿದವು ದಳಪತಿಯಪರಭಾಗದಲಿ ೩೮

ಪ್ರಳಯಪವನನ ಹೊಯ್ಲಿನಲಿ ಕಳ
ವಳಿಸಿದಮರಾದ್ರಿಯವೊಲುದುರಿದ
ಬಿಲುಸರಳ ಹೆಗಲೋರೆಗೊರಳರೆಮುಚ್ಚುಗಣ್ಣುಗಳ
ತಳಿತ ರಕ್ತಾಂಕುರದ ಬಳಕೆಗೆ
ಬಳಲಿದಿಂದ್ರಿಯಕುಳದ ಮೂರ್ಛಾ
ವಿಲಸಿತಾಂಗದ ಶಲ್ಯನಿದ್ದನು ರಥದ ಮಧ್ಯದಲಿ ೩೯

ಅರಸ ಕೇಳೈ ಮರವೆಗಾತ್ಮನ
ನೆರವ ಕೊಟ್ಟು ಮುಹೂರ್ತಮಾತ್ರಕೆ
ಮರಳಿಚಿದವೊಲು ಕಂದೆರೆದು ನೋಡಿದನು ಕೆಲಬಲನ
ಸರಳ ಕಿತ್ತೌಷಧಿಯ ಲೇಪವ
ನೊರಸಿದನು ತೊಳೆತೊಳೆದು ನೂತನ
ವರ ದುಕೂಲವನುಟ್ಟು ಕೊಂಡನು ನಗುತ ವೀಳೆಯವ ೪೦

ತುಡುಕಿದನು ಬಿಲುಸರಳನಕಟವ
ಗಡಿಸಿದನಲಾ ಧರ್ಮಸುತನು
ಗ್ಗಡದಲೊಂದು ಮುಹೂರ್ತವಾಯಿತೆ ಹಗೆಗೆ ಸುಮ್ಮಾನ
ತೊಡಕಿದೆಡೆಗೆ ಜಯಾಪಜಯ ಸಂ
ಗಡಿಸುವವು ತಪ್ಪೇನು ಯಮಸುತ
ಹಿಡಿ ಧನುವನನುವಾಗೆನುತ ಮೂದಲಿಸಿದನು ಶಲ್ಯ ೪೧

ನರನ ರಥವದೆ ಮರೆಯಹೊಗು ಮುರ
ಹರನ ಮರೆವೊಗು ಭೀಮಸೇನನ
ಕರಸಿ ನೂಕು ಶಿಖಂಡಿ ಸಾತ್ಯಕಿ ಸೃಂಜಯಾದಿಗಳ
ಅರಸುಗುರಿಗಳ ಹೊಯ್ಸು ಗೆಲುವಿನ
ಗರುವನಾದಡೆ ನಿಲ್ಲೆನುತಲು
ಬ್ಬರಿಸಿ ಮಾದ್ರಾಧೀಶನೆಚ್ಚನು ಧರ್ಮನಂದನನ ೪೨

ಏನ ಹೇಳುವೆ ಭಟನ ಶರ ಸಂ
ಧಾನವನು ಪುಂಖಾನುಪುಂಖವಿ
ಧಾನವನು ಝೇಂಕಾರಶರಜಾಳ ಪ್ರಸಾರಣವ
ಆ ನಿರಂತರ ಸರಳ ಸಾರದ
ಸೋನೆ ಸದೆದುದು ಧರ್ಮಸುತನುರ
ಣಾನುರಾಗವ ತೊಳೆದುದದ್ಭುತವಾಯ್ತು ನಿಮಿಷದಲಿ ೪೩

ಸರಳ ಮುರಿಯೆಸಲಾ ಸರಳ ಕ
ತ್ತರಿಸಿ ಹತ್ತಂಬಿನಲಿ ರಾಯನ
ಬರಿಯ ಕವಚವ ಹರಿಯಲೆಚ್ಚನು ಮೂರು ಬಾಣದಲಿ
ಶಿರದ ಸೀಸಕವನು ನಿಘಾತದ
ಲೆರಡು ಶರದಲಿ ಮತ್ತೆ ಭೂಪತಿ
ಯುರವನಗುಳಿದನೆಂಟರಲಿ ಮಗುಳೆಚ್ಚು ಬೊಬ್ಬಿರಿದ ೪೪

ಗರುಡತುಂಡದ ಹತಿಗೆ ಫಣಿಯೆದೆ
ಬಿರಿವವೊಲು ಯಮಸುತನ ತನು ಜ
ರ್ಜ್ಝರಿತವಾದುದು ಜರಿವ ಜೋಡಿನ ಜಿಗಿಯ ಶೋಣಿತದ
ಮುರಿದ ಕಂಗಳ ಮಲಗಿನಲಿ ಪೈ
ಸರದ ಗಾತ್ರದ ಗಾಢವೇದನೆ
ಯುರವಣಿಸೆ ಸೊಂಪಡಗಿ ನಿಮಿಷ ಮಹೀಶ ಮೈಮರೆದ ೪೫

ಬಿದ್ದನಾಚೆಯು ದೊರೆ ಸುಯೋಧನ
ಗೆದ್ದನಿನ್ನೇನೆನುತ ಸುಭಟರ
ನದ್ದಿತತಿಸುಮ್ಮಾನಸಾಗರ ನಿನ್ನ ಮೋಹರವ
ಅದ್ದರೋ ಶೋಕಾಂಬುಧಿಯಲೊಡೆ
ಬಿದ್ದರೋ ಭೀಮಾರ್ಜುನರಿಗುಸು
ರಿದ್ದುದೋ ಬರಹೇಳೆನುತ ಬೊಬ್ಬಿರಿದನಾ ಶಲ್ಯ ೪೬

ಗಜಬಜಿಸಿದುದು ವೈರಿಸುಭಟ
ವ್ರಜ ನಕುಲ ಸಹದೇವ ಸಾತ್ಯಕಿ
ವಿಜಯ ಧೃಷ್ಟದ್ಯುಮ್ನ ಭೀಮ ದ್ರೌಪದೀಸುತರು
ವಿಜಿತನೋ ವಿಗತಾಸುವೋ ಧ
ರ್ಮಜನ ಹದನೇನೆನುತ ಚಿಂತಾ
ರಜನಿಯಲಿ ಕಂಗೆಟ್ಟುದಾ ಬಲವರಸ ಕೇಳೆಂದ ೪೭

ಕ್ಷಣಕೆ ಮರಳೆಚ್ಚತ್ತನಸ್ತ್ರ
ವ್ರಣವ ತೊಳೆದರು ಘಾಯದಲಿ ಕೇ
ವಣಿಸಿದರು ದಿವ್ಯೌಷಧಿಯ ಗಂಧಾನುಲೇಪದಲಿ
ರಣವಿಜಯ ನವ ವಸನ ಮಣಿಭೂ
ಷಣ ಪರಿಷ್ಕೃತನಾಗಿ ತಿರುವಿನ
ಗೊಣೆಯವನು ನೇವರಿಸಿದನು ಸಂತೈಸಿ ಸಂಹನವ ೪೮

ಮರವೆ ಮಸಳಿತೆ ಭೂಮಿಪತಿ ಕಂ
ದೆರೆದಿರೇ ಭೀಮಾರ್ಜುನರು ನಿ
ಮ್ಮಿರಿತಕೊದಗಿದರಿಲ್ಲಲಾ ನೀವೇಕೆ ರಣವೇಕೆ
ನೆರೆ ಧನುರ್ವೇದಾರ್ಥಸಾರವ
ನರಿವೆಯಾದರೆ ಕೊಳ್ಳೆನುತ ಬಿಡೆ
ತರಿದನೆಂಟಂಬಿನಲಿ ಧ್ವಜ ರಥ ಹಯವನಾ ಶಲ್ಯ ೪೯

ಧನುವನೆರಡಂಬಿನಲಿ ಮಗುಳೆ
ಚ್ಚನು ಮಹೀಶನ ಸಾರಥಿಯ ಮೈ
ನನೆಯೆ ನವ ರುಧಿರದಲಿ ಮರಳೆಚ್ಚನು ಯುಧಿಷ್ಠಿರನ
ಮನನ ಶಾಸ್ತ್ರ ಶ್ರವಣ ನಿಯಮಾ
ಸನ ಸಮಾಧಿ ಧ್ಯಾನ ವಿದ್ಯಾ
ವಿನಯವಲ್ಲದೆ ರಣದ ಜಂಜಡವೇಕೆ ನಿಮಗೆಂದ ೫೦

ಉಡಿದು ಬಿದ್ದುದು ಚಾಪ ಸಾರಥಿ
ಕಡಿವಡೆದು ರಥ ನುಗ್ಗುನುಸಿಯಾ
ಯ್ತುಡಗುದರಿಯಾಯ್ತುಶ್ಚ ಚಯ ಸಜ್ಜೋಡು ತಡಿ ಸಹಿತ
ನಡುಗಿತರಿಬಲವವನಿಪತಿ ಕಾ
ಲ್ನಡೆಗೆ ಬಂದನು ಮತ್ತೆ ರಥವಂ
ಗಡವ ಮೇಳೈಸಿದನು ನಗುತಡರಿದನು ಮಣಿರಥವ ೫೧

ಬೊಬ್ಬಿರಿದುದಾ ಸೇನೆ ರಾಯನ
ಸರ್ಬದಳ ಜೋಡಿಸಿತು ಸೋಲದ
ಮಬ್ಬು ಹರೆದುದು ಜಯದ ಜಸವೇರಿದನು ನರನಾಥ
ಉಬ್ಬಿದನು ಸತ್‌ಕ್ಷತ್ರತೇಜದ
ಗರ್ಬ ಗಾಡಿಸಿತಾರಿ ಮಿಡಿದನು
ತೆಬ್ಬಿನಸ್ತ್ರವ ತೂಗಿ ತುಳುಕಿದನಂಬಿನಂಬುಧಿಯ ೫೨

ಕಾದುಕೊಳು ಮಾದ್ರೇಶ ಕುರುಬಲ
ವೈದಿಬರಲಿಂದಿನಲಿ ನಿನ್ನಯು
ಮೈದುನನ ಕಾಣಿಕೆಯಲೇ ಸಂಘಟನೆಗೀ ಸರಳು
ಕೈದುಕಾತಿಯರುಂಟೆ ಕರೆ ನೀ
ನೈದಲಾರೆಯೆನುತ್ತ ಮೂನೂ
ರೈದು ಶರದಲಿ ಕಡಿದನಾ ಸಾರಥಿಯ ರಥ ಹಯವ ೫೩

ತೇರು ಹುಡಿಹುಡಿಯಾಯ್ತು ಹೂಡಿದ
ವಾರುವಂಗಳನಲ್ಲಿ ಕಾಣೆನು
ಸಾರಥಿಯ ತಲೆ ನೆಲದೊಳದ್ದುದು ಮಿದುಳ ಜೊಂಡಿನಲಿ
ಆರಿ ಬೊಬ್ಬಿರಿದರಸವೆಸಲು
ಬ್ಬಾರದಲಿ ಕಣೆಯಡಸಿದವು ಕೈ
ವಾರವೇಕೆ ಭಡಾಳಿಸಿತು ಚಪಳತೆ ಯುಧಿಷ್ಠಿರನ ೫೪

ಅರಸ ಕೇಳೈ ಬಳಿಕ ಮಾದ್ರೇ
ಶ್ವರನ ರಥ ಸಾರಥಿ ವಿಸಂಚಿಸ
ಲುರಿದನಧಿಕಕ್ರೋಧಶಿಖಿ ಪಲ್ಲೈಸಿತಕ್ಷಿಯಲಿ
ಕುರುಬಲದ ತಲ್ಲಣವನುರೆ ಸಂ
ಹರಿಸಿ ಹರಿಗೆಯಡಾಯುಧದಲರಿ
ಧರಣಿಪನಮೇಲ್ವಾಯ್ದು ಹೊಯ್ದನು ರಥ ಹಯಾವಳಿಯ ೫೫

ವಾರುವನ ವೈಚಿತ್ರಗತಿಯ ನಿ
ಹಾರದಲಿ ಸಾರಥಿ ನರೇಂದ್ರನ
ತೇರ ತಿರುಗಿಸಿದನು ವಿಘಾತಿಯಲೊಂದು ಬಾಹೆಯಲಿ
ಆರಿ ಹೊಯ್ದನುಹಯವನಗ್ಗದ
ವಾರಣಾವಳಿಗಳ ಪದಾತಿಯ
ತೇರ ತೆಕ್ಕೆಯನಿಕ್ಕಿದನು ಪ್ರತ್ಯೇಕಸಾವಿರವ ೫೬

ಮಲೆತ ಧೃಷ್ಟದ್ಯುಮ್ನನನು ಭಯ
ಗೊಳಿಸಿ ಸೋಮಕ ಸೃಂಜಯರನ
ಪ್ಪಳಿಸಿದನು ಸಾತ್ಯಕಿ ಯುಧಾಮನ್ಯೂತ್ತಮೌಂಜಸರ
ದಳದೊಳೋಡಿಸಿ ಮುರಿದು ಚಾತು
ರ್ಬಲವ ಸವರಿ ಶಿಖಂಡಿ ನಕುಲರ
ಹೊಲಬುಗೆಡಿಸಿ ಮಹೀಪತಿಯ ಪಡಿಮುಖಕೆ ಮಾರಾಂತ ೫೭

ಎಸು ಯುಧಿಷ್ಠಿರ ಹಲಗೆ ಖಡ್ಗವ
ಕುಸುರಿದರಿಯಾ ಚಾಪವಿದ್ಯಾ
ಕುಶಲನೆಂಬರಲೈ ತನುತ್ರ ರಥಂಗಳಿಲ್ಲೆಮಗೆ
ಅಸುವ ತಡೆವರೆ ರಣಪಲಾಯನ
ವೆಸೆವುದೇ ಕ್ಷತ್ರಿಯರಿಗತಿಸಾ
ಹಸಿಕನಾದಡೆ ನಿಲ್ಲೆನುತ ಮೂದಲಿಸಿದನು ಶಲ್ಯ ೫೮

ಅಕಟಕಟ ಧರ್ಮಜನನೀ ಕಂ
ಟಕಕೆ ಕೈವರ್ತಿಸಿದರೇ ಪಾ
ತಕರು ಪಾಂಡವರೆನುತ ಕುರುಬಲವೆಲ್ಲ ಸಮತಳಿಸೆ
ವಿಕಟ ರೋಷಶಿಖಿಸ್ಫುಲಿಂಗ
ಪ್ರಕಟ ಭೀಷಣಸಹಿತ ಕೌಕ್ಷೇ
ಯಕವ ಖಂಡಿಸಿ ಧರೆ ಬಿರಿಯೆ ಬೊಬ್ಬಿರಿದನಾ ಭೀಮ ೫೯

ಲೇಸ ಮಾಡಿದೆ ಭೀಮ ಕಟ್ಟಾ
ಳೈಸಲೇ ನೀನವರೊಳಗೆ ನಿ
ನ್ನಾಸೆಯಂಲ್ಲಾ ಧರ್ಮಪುತ್ರನ ಸತ್ವಸಂಪದಕೆ
ಐಸೆ ಬಳಿಕೇನೆನುತ ಶಲ್ಯವಂ
ಹೀಶ ಮುರಿಯಲು ಹೊಸ ರಥವ ವೇ
ಳೈಸಿ ಸಾರಥಿ ಸಂಧಿಸಿದನವಧಾನ ಜೀಯೆನುತ ೬೦

ರಥಕೆ ಬಂದು ಪಸಾಯವನು ಸಾ
ರಥಿಗೆ ಕೊಟ್ಟನು ಚಾಪಶರವನು
ರಥದೊಳಗೆ ತುಂಬಿದನು ನಂಬಿಸಿದನು ಸುಯೋಧನನ
ಪೃಥೆಯ ಮಕ್ಕಳ ರಣಪರಾಕ್ರಮ
ವೃಥೆ ಕಣಾ ಕರ್ಣಾದಿ ಸಂಭಟ
ವ್ಯಥೆಯ ನಿಲಿಸುವೆನೆನುತ ಮೂದಲಿಸಿದನು ಧರ್ಮಜನ ೬೧

ಸಾರಥಿಗೆ ಸೂಚಿಸಿ ನೃಪಾಲನ
ಸಾರೆ ದುವ್ವಾಳಿಸಲು ಮಿಗೆ ನೃಪ
ನೋರೆಗೊಂಡನು ತಿರುಗೆ ತಿರುಗಿದನೊಲೆದೊಡೊಡನೊಲೆದು
ಚೂರಿಸುವ ನಾರಾಚವಿಕ್ರಮ
ದೋರಣೆಗೆ ನಾರಾಚಿಸಿತು ವಿ
ಸ್ತಾರದಲಿ ವಿಸ್ತರಿಸಿದನು ಜಯಸಮರಸಾಹಸವ ೬೨

ಹಿಂದೆ ಕರ್ಣನು ಫಲುಗುಣನು ಬಳಿ
ಕಿಂದು ಶಲ್ಯಯುಧಿಷ್ಠಿರರು ಸಾ
ನಂದದಲಿ ಸಮತಳಿಸಿ ಕಾದಿದರುಭಯಬಲ ಹೊಗಳೆ
ಇಂದು ಮಾದ್ರಾಧೀಶ್ವರಗೆ ಯಮ
ನಂದನನು ಯಮಸಂತಗೆ ಪಡಿ ತಾ
ಸಂದನೈ ಮಾದ್ರಾಧಿಪತಿಯೆಂದಂದು ಭಟಸ್ತೋಮ ೬೩

ಅರಸ ಕೇಳೈ ಕೃಷ್ಣಶಕ್ತಿ
ಸ್ಫುರಣವೈಸಲೆ ನಿಮ್ಮ ಬಲ ಸಂ
ಹರಣಕಾವುದು ಬೀಜ ನಿರ್ದೈವರ ವಿಲಾಸವಿದು
ಹರಿ ಯುಧಿಷ್ಠಿರ ನೃಪನನೆಕ್ಕಟಿ
ಗರೆದು ನಿಜಶಕ್ತಿಪ್ರಯೋಗವ
ನೊರೆದಡೊಡಬಟ್ಟನು ಹಸಾದದ ಮಧುರವಚನದಲಿ ೬೪

ಆಯಿದನು ಶಸ್ತ್ರಾಸ್ತ್ರದಲಿ ದಿ
ವ್ಯಾಯುಧವನರೆಬಳಿದ ತಪ
ನೀಯರೇಖೆಯ ಕುಣಿವ ಗಂಟೆಯ ಹೊಳೆವ ಹೊಂಗರಿಯ
ಛಾಯಿಧಾರೆಯ ತೈಲಲೇಪನ
ದಾಯತದ ಚೌರಿಗಳ ರಿಪುಭಟ
ನಾಯುಷದ ಕಡೆವಗಲ ಭುಕ್ತಿಯ ಶಕ್ತಿಯನು ನೃಪತಿ ೬೫

ತುಡುಕಿದನು ಹೊಸರವಿಯ ತೇಜದ
ದಡಿಯನುಗಿದಂದಲಿ ಹೊಳೆಹೊಳೆ
ವುಡುನಿಕರವುಚ್ಚಳಿಪವೊಲು ಮಣಿಮಯದ ಕಾಂತಿಗಳ
ಕಡಿಮೊನೆಯ ಪಡಿಮುಖದಲೊದರುವ
ಕಿಡಿಯ ಘಂಟಾರವದ ರಭಸದ
ರಘುಡಪದಲಿ ಜೋಡಿಸಿದ ಶಕ್ತಿಯಲಿಟ್ಟನವನೀಶ ೬೬

ಇದಿರೊಳೆಚ್ಚನು ಶಲ್ಯನಂಬಿನ
ಹೊದೆ ಸವೆಯೆ ಹರಿತಪ್ಪ ಶಕ್ತಿಯು
ತುದಿಗೆ ಕಬಳಗ್ರಾಸವಾದುದಲೈ ವಿಚಿತ್ರವಲಾ
ಹೊದರುಗಿಡಿಗಳ ಕೇಸುರಿಯ ಹಾ
ರದಲಿ ಹರಿತಂದಹಿತ ದಳಪತಿ
ಯೆದೆಯನೊದೆದುದು ನೆಲಕೆ ನಟ್ಟುದು ನಾಲ್ಕು ಮುಷ್ಟಿಯಲಿ ೬೭

ಕಾರಿದನು ರುಧಿರವನು ಧರಣಿಗೆ
ಹಾರಿ ಬಿದ್ದನು ಮಾದ್ರಪತಿಯೆದೆ
ಡೋರಿನಲಿ ಡಾವರಿಸಿದವು ರಕ್ತಾಂಬುಧಾರೆಗಳು
ಮೀರಿತಸು ಕಂಠವನು ನಾಸಿಕ
ಕೇರಿದುದು ನಿಟ್ಟುಸುರು ನಿಮಿಷಕೆ
ಚೀರಿದುದು ಕುರುರಾಯದಳ ಶಲ್ಯಾವಸಾನದಲಿ ೬೮

ಅಹಹ ಸೇನಾಪತಿಯ ಮಗ್ಗುಲು
ಮಹಿಗೆ ಬಿದ್ದುದು ಬೆಚ್ಚಿತೀಚೆಯ
ಬಹಳಬಲರಿನ್ನಾರು ಕುರುಸೇನಾಧುರಂಧರರು
ಮಿಹಿರಸುತ ಗುರು ಭೀಷ್ಮರಲಿ ಸ
ನ್ನಿಹಿತನಾದನು ಶಲ್ಯನೆನೆ ಕಂ
ಗಹನವೀ ರಣವೆನುತ ಶಲ್ಯಾನುಜನು ಮಾರಾಂತ ೬೯

ಗೆಲವು ನಿನಗಾಯ್ತರಸ ಹರಿಬಕೆ
ನಿಲುಕಿದೆನ್ನನು ಸಂತವಿಸಿ ನಿಜ
ಬಲದಲೊಸಗೆಯ ಮಾಡಿಸಾ ಮಾದ್ರೇಶಮಾರಣವ
ಅಳುಕದಿದಿರಾಗೆನುತ ಬಾಣಾ
ವಳಿಯ ತವಿಸೆ ನಿರಂತರಾಸ್ತ್ರದ
ಜಲನಿಧಿಗೆ ವಡಬಾಗ್ನಿಯಾದನು ನಗುತ ಯಮಸೂನು ೭೦

ಆತನಸ್ತ್ರವ ಮುರಿಯೆಸುತ ರಥ
ಸೂತ ಹಯವನು ತರಿದು ಬಾಣ
ವ್ರಾತದಲಿ ಶಲ್ಯಾನುಜನ ಹೂಳಿದನು ಹರಹಿನಲಿ
ಈತನನು ಕೆಡಹಿದನು ಸಾಲ್ವಮ
ಹೀತಳಾಧಿಪನವನ ಹರಿಬಕೆ
ಭೂತಳೇಶನ ಕೆಣಕಿ ಕಂಡನು ವರ ಸುರವ್ರಜವ ೭೧

ಆರಿ ಹೊಕ್ಕುದು ಶಲ್ಯನೃಪಪರಿ
ವಾರ ಮಾದ್ರದ ನಾಯಕರು ಜು
ಜ್ಝಾರ ಮನ್ನೆಯ ಮಂಡಳಿಕ ಸಾಮಂತಸಂದೋಹ
ಭೂರಿಬಲ ಸಾಲ್ವನ ಭಟಾವಳಿ
ಯಾರುಭಟೆಯಲಿ ನೂಕಿದುದು ವಿ
ಸ್ತಾರಿಸಿತಲೈ ಧರ್ಮನಂದನನೊಡನೆ ಬಲುಸಮರ ೭೨

ಕೇಳಿದನು ಕುರುರಾಯ ಮಾದ್ರನೃ
ಪಾಲನವಸಾನವನು ಕರಸಿದ
ನಾಳು ಕುದುರೆಯ ರಥ ಮದೋತ್ಕಟ ಗಜಘಟಾವಳಿಯ
ಮೇಳವದ ಮೋಡಿಯಲಿ ರಥ ದು
ವ್ವಾಳಿಸಿತು ಫಡ ಪಾಂಡುತನುಜರ
ಸಾಲ ಹೊಯ್ ಹೊಯ್ಯೆನುತ ಹೊಕ್ಕನು ಲಳಿಯ ಲಗ್ಗೆಯಲಿ ೭೩

ರಾಯನೊಡನೆ ಸಮಸ್ತ ಬಲವಡು
ಪಾಯಲೌಕಿತ ಪಾರ್ಥ ಸಾತ್ಯಕಿ
ವಾಯುಸಂತರಾಚೆಯಲಿ ಮೇಳೈಸಿತ್ತು ನೃಪಸೇನೆ
ಸಾಯಕದ ಸೂಠಿಗಳ ಸಬಳದ
ಪಾಯದಳ ರಥ ವಾಜಿ ಗಜಘಟೆ
ಲಾಯಶುದ್ಧದ ತೇಜಿ ಹೊಕ್ಕವು ವಾಘೆಸರಿಸದಲಿ ೭೪

ಥಟ್ಟನೊಡಹೊಯ್ದವನಿಪತಿ ಜಗ
ಜಟ್ಟಿಗಳ ಕೆಣಕಿದನು ನಕುಲನ
ನಟ್ಟಿದನು ಸಹದೇವನಡಹಾಯ್ದರೆ ವಿಭಾಡಿಸಿದ
ಬಿಟ್ಟ ಧೃಷ್ಟದ್ಯುಮ್ನನನು ಹುಡಿ
ಗುಟ್ಟಿದನು ಸಾತ್ಯಕಿಯ ಜೋಡಿನ
ಲೊಟ್ಟಿದನು ಕೂರಂಬುಗಳನುಬ್ಬಿನಲಿ ಕುರುರಾಯ ೭೫

ಮರಳಿ ಪಂಚದ್ರೌಪದೇಯರ
ಪರಿಭವಿಸಿದನು ಧರ್ಮಪುತ್ರನ
ತೆರಳಿಚಿದ ಸಹದೇವ ನಕುಲರ ಮತ್ತೆ ಸೋಲಿಸಿದ
ವರ ಯುಧಾಮನ್ಯೂತ್ತಮೌಜರ
ಹೊರಳಿಸಿದನವನಿಯಲಿ ಭೀಮಾ
ದ್ಯರಿಗೆ ಭೀತಿಯ ಬೀರಿದನು ಬೇಸರದೆ ಕುರುರಾಯ ೭೬

ಕೆದರುತದೆ ನಮ್ಮವರ ದಳ ದೊರೆ
ಯದಟು ಸುಕ್ಕಿತು ರಾಯನೊಬ್ಬನೆ
ಕದನದಲಿ ಕೈದೋರಿ ಭಂಗಿಸಿದನು ಮಹಾರಥರ
ಹೊದರು ತಳಿತುದು ಲಗ್ಗೆವರೆ ಮೋ
ನದಲಿ ಮುಗುಳ್ದವು ಪಾರ್ಥ ದಿವ್ಯಾ
ಸ್ತ್ರದಲಿ ಕೈಮಾಡೆಂದು ನುಡಿದನು ವೀರನಾರಯಣ ೭೭

ಇತಿ ಶ್ರೀಮದಚಿಂತ್ಯಮಹಿಮ ಗದುಗು ವೀರನಾರಾಯಣ ಚರಣಾರವಿಂದ
ಮಕರಂದ ಮಧುಪಾನ ಪರಿಪುಷ್ಟ ವಚಃಷಟ್ಪದೀನಿಕಾಯ
ಶ್ರೀಮತ್ಕುಮಾರವ್ಯಾಸಯೋಗೀಂದ್ರ ವಿರಚಿತಮಪ್ಪ
ಕರ್ಣಾಟ ಭಾರತ ಕಥಾಮಂಜರಿಯೊಳ್
ಶಲ್ಯಪರ್ವ ಸಮಾಪ್ತಮಾದುದು

ಗದಾ ಪರ್ವ

ಮೊದಲನೆಯ ಸಂಧಿ

ಸೂ. ಶಲ್ಯನವಸಾನದಲಿ ಕೌರವ
ಮಲ್ಲ ದಳಪತಿಯಾಗಿ ರಣದಲಿ
ನಿಲ್ಲದಡಗಿದನಿತ್ತ ಸಂಜಯ ಬಂದನಾಹವಕೆ

ಕೇಳು ಧೃತರಾಷ್ಟ್ರಾವನಿಪ ಸಿರಿ
ಲೋಲಸಹಿತರ್ಜುನನು ಸೇನಾ
ಜಾಲವನು ಸಂತೈಸಿ ದೊರೆ ಸಂಯ್ಯಾನವೆಂದೆನುತ
ಆಳೊಡನೆ ಬೆರಸಿದನು ಕುರುಭೂ
ಪಾಲಕನ ಥಟ್ಟಿನಲಿ ಶಸ್ತ್ರ
ಜ್ವಾಲೆಗಳ ಕೆದರಿದನು ಹೊದರಿನ ಹಿಂಡ ಹರೆಗಡಿದ ೧

ಎಲವೊ ಕಪಟದ್ಯೂತಕೇಳೀ
ಕಲುಷಿತಾಂತಃಕರಣ ನಿನ್ನೀ
ಬಲಕೆ ಪತಿ ನೀನೊ ಕೃಪಾಚಾರಿಯನೊ ಗುರುಸುತನೊ
ಖಳ ಸುಶರ್ಮನೊ ಶಕುನಿಯೋ ನಿ
ನ್ನುಳಿದವೊಡವುಟ್ಟಿದರೊ ರಾಜಾ
ವಳಿಯೊಳಾರಳಲಿಗರೆನುತ ತೆಗೆದೆಚ್ಚನಾ ಪಾರ್ಥ ೨

ಅರಸ ಕೇಳ್ಳೈ ಮೂರು ಸಾವಿರ
ಕರಿಘಟೆಗಳಿಪ್ಪತ್ತು ಸಾವಿರ
ತುರಗದಳ ರಥವೆರಡುಸಾವಿರ ಲಕ್ಷ ಕಾಲಾಳು
ಅರಸುಗಳು ಮೂನೂರು ನಿಂದುದು
ಕುರುಬಲದ ವಿಸ್ತಾರ ಕೌರವ
ಧರಣಿಪತಿಯೇಕಾದಶಾಕ್ಷೋಹಿಣಿಯು ಶೇಷವಿದು ೩

ಕರಿಘಟೆಗಳೈನೂರು ಮೂವ
ತ್ತೆರಡು ಸಾವಿರ ಪಾಯದಳ ಸಾ
ವಿರದ ನೂರು ವರೂಥ ಮಂಗಡದವನಿಪರು ಸಹಿತ
ತುರುಕ ಬರ್ಬರ ಪಾರಸೀಕರ
ತುರಗವೈಸಾವಿರ ಸಹಿತ ಮೋ
ಹರಿಸಿ ನಿಂದನು ಶಕುನಿ ಥಟ್ಟಿನ ಬಲದ ಬಾಹೆಯಲಿ ೪

ನೂರು ರಥವಿನ್ನೂರು ಗಜವೈ
ನೂರು ಹಯವೈಸಾಸಿರದ ಮೂ
ನೂರು ಸುಭಟರು ಸಹಿತ ಮೋಹರದೆರಡು ಬಾಹೆಯಲಿ
ತೋರಿದರು ಕೃತವರ್ಮ ಕೃಪರೈ
ನೂರುಗಜ ಗುರುತನುಜ ಸಹಿತೀ
ಮೂರುದಳಕೊತ್ತಾಗಿ ನಿಂದನು ಕೌರವರರಾಯ ೫

ಕವಿದುದಿದು ದುವ್ವಾಳಿಸುತ ರಥ
ನಿವಹ ಬಿಟ್ಟವು ಕುದುರೆ ಸೂಠಿಯ
ಲವಗಡಿಸಿ ತೂಳಿದವು ಹೇರಾನೆಗಳು ಸಂದಣಿಸಿ
ಸವಡಿವೆರಳಲಿ ಸೇದುವಂಬಿನ
ತವಕಿಗರು ತರುಬಿದರು ಬಲುಬಿ
ಲ್ಲವರು ಮೊನೆಮುಂತಾಗಿ ಮೋಹಿತು ಮಿಕ್ಕ ಸಬಳಿಗರು ೬

ರಣ ಪರಿಚ್ಛೇದಿಗಳು ಮಿಗೆ ಸಂ
ದಣಿಸಿತೋ ಕುರುಸೇನೆ ವಾದ್ಯದ
ರಣಿತವದ್ರಿಯನೊದೆದುದದುಭುತ ಬೊಬ್ಬೆಗಳ ಲಳಿಯ
ಕುಣಿದವರ್ಜುನನುರುರಥದ ಮುಂ
ಕಣಿಯಲಾರೋಹಕರು ರಥ ಹಯ
ಹೆಣಗಿದವು ಹಯದೊಡನೆ ಕಂದದ ಖುರದ ಹೊಯ್ಲಿನಲಿ ೭

ಸುತ್ತುವಲಗೆಯ ಮೇಲೆ ಕಣೆಗಳ
ತೆತ್ತಿಸಿದರೀಚಿನಲಿ ಸಬಳಿಗ
ರೆತ್ತಿದರು ರಾವುತರು ಕೀಲಿಸಿದರು ರಥಧ್ವಜವ
ಮುತ್ತಿದವು ಗಜಸೇನೆ ಪಾರ್ಥನ
ತೆತ್ತಿಗರ ಬರಹೇಳು ವೇಢೆಯು
ಕಿತ್ತು ಮಂಗುಂಚುವರಾರೆನುತ ಮುಸುಕಿತ್ತು ಕುರುಸೇನೆ ೮

ಅರಸ ಕೇಳ್ಳೈ ಬಳಿಕ ಪಾರ್ಥನ
ಕೆರಳಿಚಿದರೋ ಕಾಲರುದ್ರನ
ಸರಸವಾಡಿದರೋ ಪ್ರಚಂಡಪ್ರಳಯಭೈರವನ
ಪರಿಭವಿಸಿದರೊ ಲಯಕೃತಾಂತನ
ಕರೆದರೋ ಮೂದಲಿಸಿ ನಾವಿ
ನ್ನರಿಯೆವರ್ಜುನನೆಸುಗೆಯಭಿವರ್ಣನೆಯ ನಿರ್ಣಯವ ೯

ಎಡದಲೌಕಿದ ಭಟರನಾ ಮಂ
ಗಡದ ರಾವ್ತರ ಸಮ್ಮುಖದೊಳವ
ಗಡಿಸಿದಾನೆಯ ಥಟ್ಟಿನಾ ತೇರುಗಳ ಸಮರಥರ
ಕಡಿದನೊಂದೇ ಸರಳಿನಲಿ ಚಿನ
ಕಡಿಗಳೆದು ರುಧಿರಾಂಬುರಾಶಿಯೊ
ಳಡಗಿಸಿದ ಚತುರಂಗಬಲವನದೊಂದು ನಿಮಿಷದಲಿ ೧೦

ಅಳಿದವಿನ್ನೂರಾನೆ ಸರಳ
ಚ್ಚಳಿಸಿದವು ಮೂನೂರು ಪುನರಪಿ
ಮಲಗಿದವು ನೂರಾನೆ ಕೆಡೆದವು ತಾರುಥಟ್ಟಿನಲಿ
ಬಳಿಕ ನೂರು ನಿರಂತರಾಸ್ತ್ರಾ
ವಳಿ ವಿಘಾತಿಗೆ ನೂರು ಲೆಕ್ಕವ
ಕಳೆದವಿನ್ನೂರಾನೆ ಪಾರ್ಥನ ಕೋಲ ತೋಹಿನಲಿ ೧೧

ರಥ ಮುರಿದುವೈನೂರು ತತ್ಸಾ
ರಥಿಗಳಳಿದುದು ನೂರು ಮಿಕ್ಕುದು
ರಥವನಿಳಿದೋಡಿದುದು ಸಮರಥರೆಂಟುನೂರೈದು
ಪೃಥವಿಗೊರಗಿದುವೆಂಟು ಸಾವಿರ
ಪೃಥುಳ ಹಯ ನುಗ್ಗಾಯ್ತು ಗಣನೆಯ
ರಥ ಪದಾತಿಯೊಳಿತ್ತಲೆನೆ ಸವರಿದನು ಪರಬಲವ ೧೨

ಒದೆದು ರಥವನು ಸೂತರಿಳಿದೋ
ಡಿದರು ಚಾಪವನಿಳುಹಿ ಸಮರಥ
ರೆದೆಯ ನೀವಿತು ದೂರದಲಿ ಕರಿಕಂಧರವನಿಳಿದು
ಕೆದರಿತಾರೋಹಕರು ವಿಕ್ರಮ
ವಿದಿತ ವಿಪುಳ ಪದಸ್ಥಭೂಪರು
ಹುದುಗಿತಲ್ಲಿಯದಲ್ಲಿ ಪಾರ್ಥನ ಸರಳ ಘಾತಿಯಲಿ ೧೩

ಬಿರುದ ಬಿಸುಟರು ಧ್ವಜದ ಕಂಬವ
ಹರಿಯ ಹೊಯ್ದರು ಕಾಲ ತೊಡರನು
ಧರೆಗೆ ಬಿಸುಟರು ಹಡಪ ಬಾಹಿಯ ಚಮರಧಾರಿಗರ
ದೊರೆಗಳುಳಿದರು ಬೆದರಿ ರಥದಲಿ
ಕರಿಗಳಲಿ ವಾರುವದಿನಿಳಿಗು
ಪ್ಪರಿಸಿದರು ಹರಹಿನಲಿ ಹಾಯ್ದರು ಹೊತ್ತ ದುಗುಡದಲಿ ೧೪

ಬೆದರಿ ಗಜ ಮುಂಡಾಸನದಲೋ
ಡಿದುವು ಚಮರೀಮೃಗದವೊಲು ಬಲು
ಗುದುರೆ ಹಾಯ್ದವು ಕಂದದಲಿ ಬಲುನೊಗನನಸಬಡಿದು
ಕುದುರೆಯೆಳೆದವು ಬರಿರಥವನೋ
ಡಿದ ಪದಾತಿಯು ಬಿಸುಟ ಕೈದುವ
ಹೊದೆದುದಿಳೆ ಕಳನಗಲದಲಿ ಕಂಡೆನು ಮಹಾದ್ಭುತವ ೧೫

ಮರಳಿ ವಾಘೆಯ ಕೊಂಡು ರಾವ್ತರು
ತಿರುಗಿದರು ಹಮ್ಮುಗೆಯ ನೇಣ್ಗಳ
ಹರಿದು ಹಕ್ಕರಿಕೆಗಳ ಬಿಸುಟರು ಹಾಯ್ಕಿ ಖಂಡೆಯವ
ಬಿರುದ ಸಂಭಾಳಿಸುವ ಭಟ್ಟರ
ನಿರಿದರಾರೋಹಕರು ಕರಿಗಳ
ತಿರುಹಿ ಗುಳ ರೆಂಚೆಗಳ ಕೊಯ್ದೀಡಾಡಿದರು ನೆಲಕೆ ೧೬

ರಾಯ ಕೇಳ್ಕೆ ಬಲದ ಬಾಹೆಯ
ನಾಯಕರು ಜಾರಿದರು ವಾಮದ
ಜೇಯ ಸುಭಟರು ಸಿಡಿದು ತರಹರಿಸಿದರು ದೂರದಲಿ
ರಾಯ ಕಂಡನು ಬಳಿಕ ಬಲದ ಪ
ಲಾಯನದ ಪರಿವಿಡಿಯನಸುವಿನ
ಬೀಯಕಿವರಂಜಿದರೆನುತ ಮೂದಲಿಸಿದನು ನೃಪರ ೧೭

ಎಲೆ ಮಹೀಪತಿಗಳಿರ ಪುಣ್ಯ
ಸ್ಥಳ ಕುರುಕ್ಷೇತ್ರವು ಮಹಾಸ
ತ್ಕುಲದೊಳಗೆ ಜನನವು ನಿಮಗೆ ವೀರಕ್ಷತ್ರಿಯೋತ್ತಮರು
ಅಳುಕದಂಘೈಸಿದಡೆ ಸುರಸಂ
ಕುಲದ ಸೇರುವೆ ತಪ್ಪಿದರೆ ನೀ
ವಿಳಿವಿರೈ ರೌರವದೊಳಾವುದು ಲಾಗು ನಿಮಗೆಂದ ೧೮

ವೀರಮಾತೆಯರೆಂದು ತಾಯ್ಗಳ
ನಾರು ಕೊಂಡಾಡುವರು ಸತಿಯರು
ವೀರಪತ್ನಿಯರೆಂದು ನುಡಿವರೆ ನಿಮ್ಮ ರಾಣಿಯರ
ವೀರಸಿರಿ ನಿಮಗೆಂದು ವಂದಿಗ
ಳೋರೆ ಕಟಕಿಯಲೆನ್ನರೇ ಕೈ
ವಾರಿಸುವ ಕವಿನಿಕರ ನಾಚದೆ ಶಿವಶಿವಾ ಎಂದ ೧೯

ಸೆರೆನರದ ದರ್ಭೆಗಳ ಮಿದುಳಿನ
ಚರುವಿನೆಲುವಿನ ಸಮಿಧೆಗಳ ಬಿಲು
ದಿರುರವದ ಚತುರಂಗರಭಸದ ಸಾಮವೇದಿಗಳ
ಅರುಣಜಲದಾಜ್ಯದ ಸ್ರುವಾದಿಯ
ಶಿರಕಪಾಲದ ವೈರಿಪಶುಬಂ
ಧುರದ ಸಂಗರಯಜ್ಞದೀಕ್ಷೆಯ ಮರೆದಿರಕಟೆಂದ ೨೦

ಇಲ್ಲಿ ಮನುಜಸ್ತ್ರೀಯ ಮೇಳವ
ವಲ್ಲಿ ಸುರನಾರಿಯರ ರತಿ ಸಿವ
ಗಿಲ್ಲಿ ಭೌಮವಿಭಿನ್ನರಸ ಪೀಯೂಷರಸವಲ್ಲಿ
ಇಲ್ಲಿಯಧ್ರುವ ವಿಭವವಮರತೆ
ಯಲ್ಲಿ ಕಿಲ್ಬಿಷವಿಲ್ಲಿ ಶಿವಮಯ
ವಲ್ಲಿ ನೀವಿಂದೇನ ನೆನೆದಿರಿ ಶಿವಶಿವಾ ಎಂದ ೨೧

ಆವ ಭವದಲಿ ನಿಮ್ಮ ರಾಜ್ಯವ
ದಾವ ಭವದಲಿ ಪುತ್ರಮಿತ್ರರ
ದಾವ ಜನ್ಮಂಗಳ ಸಮಾಗಮ ನಿಮ್ಮ ರಾಣಿಯರು
ಈ ವಿಡಂಬನ ದೈಹಿಕವ ಸಂ
ಭಾವಿಸುತ ಪರಲೋಕಹಿತವನು
ನೀವು ನೆನೆಯದೆ ಕೆಟ್ಟುದಕೆ ಬೆರಗಾದೆ ನಾನೆಂದ ೨೨

ನೃಪನ ಮೂದಲೆ ನಿಜಕುಲಕ್ರಮ
ಕಪಯಶೋಭಯ ಪಾರಲೌಕಿಕ
ದುಪಹತಿ ಪ್ರತಿಭಟರ ನಗೆ ಸೌಭಟಪರಿತ್ಯಾಗ
ಕೃಪಣತೆಯ ದುಷ್ಕೀರ್ತಿ ಭುಜಬಲ
ದಪದಶಾವಿರ್ಭಾವವೀ ಭೂ
ಮಿಪರ ಮರಳಿಚಿತೇನನೆಂಬೆನು ಭೂಪ ಕೇಳೆಂದ ೨೩

ಕರೆದರೊಬ್ಬರನೊಬ್ಬರುರೆ ಧಿ
ಕ್ಕರಿಸಿದರು ತಮ್ಮೊಬ್ಬರೊಬ್ಬರ
ಬಿರುದ ಹಿಡಿದರು ಬಯ್ದರಪಮಾನಾನುತಾಪದಲಿ
ತಿರುಗಹೇಳೋ ರಾವುತರ ರಥಿ
ಕರ ಗಜಾರೋಹಕರನೆಂದ
ಬ್ಬರಿಸಿ ಚೌರಿಯ ಬೀಸಿ ಮರಳಿತು ಭೂಪತಿವ್ರಾತ ೨೪

ವಾರುವಂಗಳ ಬಿಗುಹನೇರಿಸಿ
ವಾರಣಂಗಳ ಗುಳವ ಜೋಡಿಸಿ
ತೇರುಗಳ ಕೀಲಚ್ಚು ಕೂಬರಯುಗವನಾರೈದು
ವೀರಪಟ್ಟವ ರಚಿಸಿ ಕಂಕಣ
ದಾರವನು ಕಟ್ಟಿದರು ಸಂಗರ
ವೀರಸಿರಿಯ ವಿವಾಹಸಮಯದ ಸೌಮನಸ್ಯದಲಿ ೨೫

ದೂಪಿಸಿದ ಬಿಳಿದುಗುಳನುಟ್ಟನು
ಲೇಪನಂಗಳ ಹೂಸಿ ಮಧುರಾ
ಳಾಪದಲೆ ಬೋಳೈಸಿ ಸಾರಥಿ ಗಜ ಹಯಾವಳಿಯ
ಭೂಪತಿಯ ರಣಯಜ್ಞಮುಖಕೆ ನಿ
ಜಾಪಘನಪೂರ್ಣಾಹುತಿಯಲೇ
ಶ್ರೀಪತಿಯ ಸಾಯುಜ್ಯವೆನುತಿದಿರಾಯ್ತು ನೃಪಕಟಕ ೨೬

ಅರಿಯಬಹುದೈ ಭಾವಮೈದನ
ಮೆರೆ ಭುಜಾಟೋಪವನು ಹಿಂದಣ
ಕೊರತೆಯನು ಕಳೆ ಮಗನೆ ಬೊಪ್ಪಕುಲಕ್ರಮಾಗತವ
ಮುರಿಯದಿರು ಮುಂಗಲಿತನಕೆ ತಾ
ನಿರಿವೆ ನಾ ಮುನ್ನೆಂದು ತಮ್ಮೊಳು
ಜರೆದರೊಡವುಟ್ಟಿದರು ಬಾಂಧವ ಮಿತ್ರ ಭೂಮಿಪರು ೨೭

ನೂಕಿತೊಂದೇ ವಾಘೆಯಲಿ ಹಯ
ನಾಕು ಸಾವಿರ ರಥದ ಜೋಡಿಯ
ಜೋಕೆ ಕವಿದುದು ಮೂರು ಸಾವಿರ ರಾಜಪುತ್ರರಲಿ
ತೋಕುಮಂಬಿನ ಜೋದರೊಗ್ಗಿನೊ
ಳೌಕಿದವು ಸಾವಿರ ಮದೇಭಾ
ನೀಕ ಬೊಬ್ಬೆಯ ಲಳಿಯಲೌಕಿತು ಲಕ್ಕ ಪಾಯದಳ ೨೮

ಸುರಿದುದಂಬಿನ ಸೋನೆ ರಥಿಕರ
ಕರಿಘಟೆಯ ಥಟ್ಟಿಂದ ಕಕ್ಕಡೆ
ಪರಶು ಶೂಲ ಮುಸುಂಡಿ ಸೆಲ್ಲೆಹ ಸಬಳ ಶಕ್ತಿಗಳು
ಅರಿಬಲಾಬ್ಧಿಯನೀಸಿದವು ತ
ತ್ತುರಗ ರಥವನು ಬೀಸಿದವು ಮದ
ಕರಿಗಳಿಕ್ಕಡಿಘಾಯಕೊದಗಿತು ರಾಯರಾವುತರು ೨೯

ನೆರೆ ಪರಿಚ್ಛೇದಿಸಿದ ಬಲ ಮು
ಕ್ಕರಿಸಿತೋ ನಿಜಸೈನ್ಯಸಾಗರ
ಬರತುದೋ ಬಲುಗೈಗಳೆದೆಗಳ ಕೆಚ್ಚು ಕರಗಿತಲಾ
ಮುರಿದು ಬರುತಿದೆ ಸೃಂಜಯರು ಕೈ
ಮುರಿದರೇ ಪಾಂಚಾಲಭಟರೆಂ
ದೊರಲಿದುದು ಮಂತ್ರಿಗಳು ರಾಯನ ರಥದ ಬಳಸಿನಲಿ ೩೦

ಅರಸ ಕೇಳು ಯುಧಿಷ್ಠಿರನ ಮೇ
ಲುರವಣಿಸಿತೀ ಸೇನೆ ಭೀಮನ
ಬಿರುದ ತಡೆದವು ಸಾವಿರಾನೆಗಳೊಂದು ಬಾಹೆಯಲಿ
ಅರರೆ ರಾವುತೆನುತ್ತ ಕವಿದುದು
ತುರಗ ಸಾವಿರ ನಕುಲ ಸಹದೇ
ವರಿಗೆ ಸಾತ್ಯಕಿಗಾಗಿ ಬಿಟ್ಟನು ರಥವನಾ ದ್ರೌಣಿ ೩೧

ರಾಯದಳದಲೆ ಚಾತುರಂಗದ
ಬೀಯ ಬೆದರಿಸಿತದಟರನು ಬಲು
ನಾಯಕರಿಗಿದಿರೊಡ್ಡಿದರು ಕೃಪ ಭೋಜ ಗುರುಸುತರು
ಆಯಿತೀ ರಣವೆನುತ ಪಾಂಡವ
ರಾಯ ಹೊಕ್ಕನು ಬಳಿಕಲಾ ಕ
ರ್ಣಾಯತಾಸ್ತ್ರನು ಕಂಡನರ್ಜುನನಾ ಮಹಾದ್ಭುತವ ೩೨

ಮೇಲುಲೋಕವ ಬಯಸಿ ಕುರುಬಲ
ಮೇಲೆ ಬಿದ್ದುದು ಜೀಯ ಜಡಿದು ನೃ
ಪಾಲನೇಕಾಂಗದಲಿ ಹೊಕ್ಕನು ಹೊದರನೊಡೆಬಡಿದು
ಮೇಲುದಾಯದಲವನಿಪನ ಸಂ
ಭಾಳಿಸುವೆನೆನೆ ನಗುತ ಲಕ್ಷ್ಮೀ
ಲೋಲ ಚಪ್ಪರಿಸಿದನು ನರನುದ್ದಂಡವಾಜಿಗಳ ೩೩

ಅರಸ ಕೇಳೈ ನಿಮಿಷದಲಿ ನೃಪ
ವರನ ರಥದಿಂದ ಮುನ್ನ ಪಾರ್ಥನ
ತಿರುವಿನಬ್ಬರ ಕೇಳಲಾದುದು ಕಳನ ಚೌಕದಲಿ
ಅರರೆ ದೊರೆಯೋ ಕೊಳ್ಳಿವನ ಕೈ
ಮರೆಯದಿರಿ ಕುರುಧರಣಿಪನ ಹಗೆ
ಹರಿಯಲೆಂದುರವಣಿಸಿ ಕವಿದುದು ಕೂಡೆ ಕುರುಸೇನೆ ೩೪

ಮೋಹಿದವು ಭರಿಕೈಗಳನು ರಥ
ವಾಹತತಿಗಾನೆಗಳು ವಂಶ
ದ್ರೋಹಿ ಸಿಲುಕಿದನೆನುತ ತಡೆದರು ರಥಿಕರೆಡಬಲನ
ಗಾಹಿಸಿತು ದೂಹತ್ತಿ ಲೌಡೆಯ
ರಾಹುತರು ಕಟ್ಟಳವಿಯಲಿ ಕವಿ
ದೋಹಡಿಸದೌಂಕಿತು ಪದಾತಿ ಧನಂಜಯನ ರಥವ ೩೫

ಏನನೆಂಬೆನು ಜೀಯ ಕುರುಬಲ
ದಾನೆಗಳ ವಿಕ್ರಮುವನತಿರಥ
ರೇನ ನಿಲುವರು ಕೆಲಬಲನ ಚತುರಂಗದುಪಹತಿಗೆ
ಭಾನುಮಂಡಲವಕಟ ತಿಮಿರಾಂ
ಭೋನಿಧಿಯಲಕ್ಕಾಡಿತೆಂಬವೊ
ಲಾ ನಿರಂತರದ ದಳದ ಥಟ್ಟಣೆ ಧೂಳಿಪಟವಾಯ್ತು ೩೬

ಮುಂಕುಡಿಯ ಹಿಡಿದಾನೆಗಳನೆಡ
ವಂಕಕೌಕಿದ ರಥಚಯವ ಬಲ
ವಂಕಕೊತ್ತಿದ ರಾವುತರನುಬ್ಬೆದ್ದ ಪಯದಳವ
ಶಂಕೆಯನು ನಾ ಕಾಣೆ ಬಲನೆಡ
ವಂಕವನು ತರಿದೊಟ್ಟಿದನು ಮಾ
ರಂಕ ನಿಲುವುದೆ ಪಾರ್ಥ ಮುನಿದಡೆ ಭೂಪ ಕೇಳೆಂದ ೩೭

ಉಡಿಯೆ ಮೋರೆಯ ಜೋಡು ಜೋದರ
ಕೊಡಹಿ ಹಾಯ್ದವು ದಂತಿಘಟೆ ಖುರ
ಕಡಿವಡಿಯೆ ಕುದುರೆಗಳು ಹಾಯ್ದವು ಹಾಯ್ಕಿ ರಾವುತರ
ಮಡಿಯೆ ಸಾರಥಿ ಮುಗ್ಗಿದವು ರಥ
ನಡೆದು ಕಾದಿ ಮಹಾರಥರು ಮೆದೆ
ಗೆಡೆದುದುಳಿದ ಪದಾತಿಪತನವರಿಯೆ ನಾನೆಂದ ೩೮

ಕರಿಘಟೆಗಳೈನೂರು ರಥ ಸಾ
ವಿರದ ಮೂನೂರೆರಡು ಸಾವಿರ
ತುರಗದಳವೆಂಬತ್ತು ಸಾವಿರ ವಿಗಡ ಪಾಯದಳ
ತೆರಳಿತಂತಕಪುರಿಗೆ ಪುನರಪಿ
ತುರಗ ಸಾವಿರ ನೂರು ರಥ ಮದ
ಕರಿಗಳಿನ್ನೂರೆಂಟು ಸಾವಿರಗಣಿತ ಪಾಯದಳ ೩೯

ಮತ್ತೆ ಮೇಲೊಡಗವಿದ ನೂರರು
ವತ್ತು ಗಜ ರಥಯೂಥ ನೂರಿ
ಪ್ಪತ್ತು ಮೂನೂರಶ್ವಚಯ ಸಾವಿರದ ನಾನೂರು
ಪತ್ತಿ ಮರಳೈವತ್ತು ಗಜ ಮೂ
ವತ್ತು ಶರವಿನ್ನೂರು ಹಯವರು
ವತ್ತು ನಾನೂರಿಂದ ಮೇಲಾಯ್ತುಳಿದ ಪಾಯದಳ ೪೦

ಬಿರುದುಪಾಡಿನ ಭಾಷೆಗಳ ನಿ
ಷ್ಠುರದ ನುಡಿಗಳ ರಾಜವರ್ಗದ
ಮರಳುದಲೆಯನೆ ಕಾಣೆನರ್ಜುನನಾಹವಾಗ್ರದಲಿ
ಹರಿವ ರಕುತದ ತಳಿತ ಖಂಡದ
ಶಿರದ ಹರಹಿನ ಕುಣಿವ ಮುಂಡದ
ಕರಿ ತುರಗ ಪಯದಳದ ಹೆಣಮಯವಾಯ್ತು ರಣಭೂಮಿ ೪೧

ಮುರಿದುದೆಡಬಲವಂಕ ಪಾರ್ಥನ
ತರುಬಿದನು ನಿನ್ನಾತ ಸೈರಿಸಿ
ಹರಿದಳವ ಕೂಡಿದನು ಕಲಿಮಾಡಿದನು ಕಾಲಾಳ
ಒರಲಿದವು ಬಹುವಿಧದ ವಾದ್ಯದ
ಬಿರುದನಿಗಳುಬ್ಬೆದ್ದು ಮಾರಿಯ
ಸೆರಗ ಹಿಡಿದನು ಕೌರವೇಶ್ವರನರ್ಜುನನ ಕೆಣಕಿ ೪೨

ಕೊಲುವಡನುಚಿತವಿಂದು ಭೀಮಗೆ
ಕಳೆದ ಮೀಸಲು ನಿನ್ನ ತನು ನೀ
ನೊಲಿದ ಪರಿಯಿಂದೆಸು ವಿಭಾಡಿಸು ರಚಿಸು ಭಾಷೆಗಳ
ಅಳುಕಿದೆವು ನಿನಗೆಂದು ರಾಯನ
ಬಳಿಯ ಜೋದರ ರಾವುತರ ರಥಿ
ಗಳ ಪದಾತಿಯನಿಕ್ಕಿದನು ಸೆಕ್ಕಿದನು ಸರಳುಗಳ ೪೩

ಜನಪ ಕೇಳೈ ನಿನ್ನ ಮಗನ
ರ್ಜುನನನೆಚ್ಚನು ಫಲುಗುಣಾಸ್ತ್ರವ
ಚಿನಕಡಿದು ಮುಗುಳೆಚ್ಚು ಪಾರ್ಥನೊಳೀರ ತೋರಿಸಿದ
ಮನದ ಮದ ಮೀರಿತು ಕಿರೀಟಿಯ
ಮೊನೆಗಣೆಯು ಮನ್ನಿಸದೆ ದುರ್ಯೋ
ಧನನು ದುವ್ವಾಳಿಸಿದನವನೀಪತಿಯ ಮೋಹರಕೆ ೪೪

ಅರಸುಮೋಹರ ಸಿಲುಕಿದುದು ದೊರೆ
ಬೆರಸಿ ಹೊಯ್ದನು ಬೇಹ ಸುಭಟರು
ಮರಳಿಯೆನೆ ಮುಂಚಿದರು ಪಂಚದ್ರೌಪದೀಸುತರು
ಧರಣಿಪತಿಯ ವಿಘಾತಿಗೊಪ್ಪಿಸಿ
ಶಿರವನೆನುತುಬ್ಬೆದ್ದು ಪಾಂಚಾ
ಲರು ಪ್ರಬುದ್ಧಕ ಸೃಂಜ ಯೆರು ರಂಜಿಸಿತು ಚೂಣಿ ಯೆಲಿ ೪೫

ಇತ್ತ ಪಡಿಬಲವಾಗಿ ಸಾವಿರ
ಮತ್ತಗಜಘಟೆ ಕೌರವೇಂದ್ರನ
ತೆತ್ತಿಗರ ತೂಳಿದರು ಪಾಂಚಾಲಪ್ರಬುದ್ಧಕರ
ಹತ್ತು ಸಾವಿರ ಪಾಯದಳ ಹೊಗ
ರೆತ್ತಿದಲಗಿನ ಹೊಳಹಿನಂತಿರೆ
ಮುತ್ತಿತವನೀಪತಿಯ ಮೋಹರದೆರಡು ಬಾಹೆಯಲಿ ೪೬

ನೂರುರಥದಲಿ ಬಲುಗುದುರೆ ನಾ
ನೂರರಲಿ ಕುರುರಾಯ ಸೂಠಿಯ
ಲೇರಿದನು ಧರ್ಮಜನ ದಳ ನುಗ್ಗಾಯ್ತು ನಿಮಿಷದಲಿ
ವೀರಿದವು ಗಜಘಟೆಗಳಾವೆಡೆ
ತೋರು ದೊರೆಗಳನೆನುತ ಬೊಬ್ಬಿರಿ
ದೇರಿಸಿದರರಿಭಟರು ನೃಪತಿಗೆ ಜೋದರಂಬುಗಳ ೪೭

ಏನು ಹೇಳುವೆನವನಿಪತಿ ಯಮ
ಸೂನುವಿನ ಸುಕ್ಷಾತ್ರವನು ನಿ
ನ್ನಾನೆಗಳನಗ್ಗಳೆಯ ರಾವ್ತರ ರಥಪದಾತಿಗಳ
ಭಾನುಬಿಂಬವ ತೆಗೆವ ತಮದ ವಿ
ತಾನದಂತಿರೆ ವಿರಸವಾಯ್ತು ಶ
ರಾನುಗತಶರಜಾಲ ಜನದ ವಿಡಾಯ್ಲತನವೆಂದ ೪೮

ಆಳ ಕೊಂದನು ನೂರ ಪುನರಪಿ
ಸೀಳಿದನು ಮೂನೂರನುಕ್ಕಿನ
ಬೋಳೆಯಂಬಿಗೆ ಬೀರಿದನು ನಾಲ್ಕೈದು ಸಾವಿರವ
ಮೇಲೆ ಮೂಸಾವಿರದ ಸವಡಿಯ
ಸೀಳಿಸಿದನಿನ್ನೂರು ಕುದುರೆಗೆ
ಕಾಲನೂರಲಿ ಲಾಯ ನೀಡಿತು ನೃಪತಿ ಕೇಳೆಂದ ೪೯

ಚೆಲ್ಲಿದವು ರಥ ಗಾಲಿ ಮುರಿದವು
ಗೆಲ್ಲಗೆಡೆದವು ಕೂಡೆ ಕಂಬುಗೆ
ಯಲ್ಲಿ ಕಾಣೆನು ಕೊಚ್ಚಿದಚ್ಚಿನ ಕಡಿದ ಕೀಲುಗಳ
ಎಲ್ಲಿಯುವು ರಥವಾಜಿ ವಾಜಿಗೆ
ತೆಲ್ಲಟಿಯಲೇ ರಥಿಕ ಸೂತರು
ಬಲ್ಲಿದರು ಕುರುಳಿಂಗೆ ಹಾಯ್ದರು ಸುರರ ಸೂಳೆಯರ ೫೦

ಉಳಿಗಡಿಯ ನಾನೂರು ಕುದುರೆಗ
ಳಳಿದವರಸನ ಶರಹತಿಗೆ ಮಂ
ಮ್ಮಳಿತವಾದುದು ಹತ್ತು ಸಾವಿರ ವಿಗಡ ಪಾಯದಳ
ಕಳಚಿ ಕೆಡೆದವು ನೂರು ರಥ ವೆ
ಗ್ಗಳೆಯತನವರಿರಾಯರಲಿ ಹೆ
ಕ್ಕಳಿಸೆ ಕಳವಳಿಸಿದನು ಕೌರವರಾಯ ಖಾತಿಯಲಿ ೫೧

ಜೋಡಿಸಿದ ಸಾವಿರ ಗಜಂಗಳ
ನೀಡಿರಿದರಂಕುಶದಿ ನೆತ್ತಿಯ
ತೋಡಿಬಿಟ್ಟರು ನೃಪನ ಮತದಲಿ ದೊರೆಯ ಸಮ್ಮುಖಕೆ
ಜೋಡಿಸಿದ ಭರಿಕಯ್ಯ ಪರಿಘದ
ಲೌಡಿಗಳ ಪಟ್ಟೆಯದಲೊಬ್ಬುಳಿ
ಗೂಡಿ ತೂಳಿದವಾನೆಗಳು ಯಮಸುತನ ಪಡಿಮುಖಕೆ ೫೨

ಎಲೆಲೆ ಭೂಪತಿ ಸಿಕ್ಕಿದನು ಗಜ
ಬಲದ ಭಾರಣೆ ಬಲುಹೆನುತ ಬಲ
ಕಳವಳಿಸೆ ಕೇಳಿದನಲ್ಲೆ ಕಲಿಭೀಮನಾಚೆಯಲಿ
ಪ್ರಳಯ ದಿವಸದ ಶಿಖಿಯ ಡಾವರ
ದೊಳಗೆ ಶ್ರಮಮಾಡಿದನೆನಲು ಮಿಗೆ
ಮೊಳಗಿ ಮುಂಡಿಯನಿಕ್ಕಿ ಮಲೆತನು ಸಿಂಹನಾದದಲಿ ೫೩

ಚೆಲ್ಲಿದವು ಗಜಯೂಥವಪ್ರತಿ
ಮಲ್ಲ ಭೀಮನ ಗದೆಯ ಘಾತಿಯ
ಘಲ್ಲಣೆಗೆ ಕಂಠಣಿಸಿದವು ಟೆಂಠಣಿಸುವಾನೆಗಳು
ಸೆಲ್ಲೆಹದ ಮಳೆಗರೆದು ಭೀಮನ
ಘಲ್ಲಿಸಿದರಾರೋಹಕರು ಬಲು
ಬಿಲ್ಲ ಜಂತ್ರದ ನಾಳಿಯಂಬಿನ ಸರಳ ಸಾರದಲಿ ೫೪

ಜನಪ ಕೇಳೈ ಜಡಿವ ತುಂತು
ರ್ವನಿಗಳನು ಬಿರುಗಾಳಿ ಮೊಗೆವವೊ
ಲನಿತು ಸೆಲ್ಲೆಹ ಶರವಳೆಯ ಗದೆಯಿಂದ ಘಟ್ಟಿಸಿ
ಜಿನುಗುವಳೆಯಲಿ ಪರ್ವತದ ಶಿಲೆ
ನೆನೆವುದೇ ಗಜಸೇನೆ ಕದಳೀ
ವನವಲೇ ಕಲಿಭೀಮದಿಗ್ಗಜ ಗಾಢ ಪದಹತಿಗೆ ೫೫

ಅವನಿಪನ ಹಿಂದಿಕ್ಕಿ ಗಜಯೂ
ಥವ ವಿಭಾಡಿಸಿ ಹಿಂಡ ಕೆದರಿದ
ನವಗಡಿಸಿದನು ಹಾರಲೂದಿದನೊದೆದು ಬೊಬ್ಬಿರಿದ
ತಿವಿದನಣಸಿನಲೂರಿ ಮೊನೆಯಲಿ
ಸವಡಿಯಾನೆಯನೆತ್ತಿದನು ಬಲ
ಬವರಿಯೆಡಬವರಿಯಲಿ ತಡೆಗಾಲ್ವೊಯ್ದನಾ ಭೀಮ ೫೬

ಒರಲಿ ತಿವಿದನು ಕರಿಯ ಬರಿಯೆಲು
ಮುರಿಯಲೊದೆದನು ಸದೆದು ದಾಡೆಯ
ತಿರುಹಿ ಕಿತ್ತನು ಬಿಕ್ಕಿದನು ಬಿದುವಿನಲಿ ಬಲುಗದೆಯ
ಜರೆದನಾರೋಹಕರ ತಲೆಗಳ
ತರಿದು ಬಿಸುಟನು ಗಜಘಟೆಯ ಥ
ಟ್ಟೊರಗಿದವು ದಡಿಸಹಿತ ನವರುಧಿರಾಂಬುಪೂರದಲಿ ೫೭

ಗುಳವನುಗಿದಾರೋಹಕರ ಮುಂ
ದಲೆಯ ಸೆಳೆದೊಡಮೆಟ್ಟಿದನು ಮುಂ
ಡಳಿಸಿದೊಡ್ಡಿನ ಮೇಲೆ ಹಾಯ್ದನು ಹೊಯ್ದನುರವಣಿಸಿ
ಕಳಚಿದನು ದಾಡೆಗಳ ಭರಿಕ್ಕೆ
ಗಳನು ತುಂಡಿಸಿ ವಾಲಧಿಯ ಬರ
ಸೆಳೆದು ಕೊಡಹಿದನಾನೆಗಳ ನಾನಾವಿಧಾನದಲಿ ೫೮

ಕೋಡ ಕಿತ್ತನು ನೂರು ಗಜವ ವಿ
ಭಾಡಿಸಿದನಿನ್ನೂರನಡಹಾ
ಯ್ದೋಡಿದವು ನೂರಾನೆ ಭೀಮನ ಗದೆಯ ಗಾಳಿಯಲಿ
ಜೋಡಿಗೆಡೆದವು ನೂರು ಮುಗ್ಗಿ ಲ
ನೀಡಿದವು ನಾನೂರು ಪುನರಪಿ
ಕೇಡುಗಂಡವು ನೂರು ಭೀಮನ ಗದೆಯ ಘಾಯದಲಿ ೫೯

ಧರಣಿಪತಿ ಕೇಳ್ ಭೀಮಸೇನನ
ಧರಧುರದ ದೆಖ್ಖಾಳದಲಿ ನ
ಮ್ಮರಸ ನಿಂದನು ಕಾದಿದನು ನೂರಾನೆಯಲಿ ಮಲೆತು
ಸರಳ ಸಾರದಲನಿಲಜನ ರಥ
ತುರಗವನು ಸಾರಥಿಯನಾತನ
ಭರವಸವ ನಿಲಿಸಿದನು ನಿಮಿಷಾರ್ಧದಲಿ ಕುರುರಾಯ ೬೦

ಒದೆದು ರಥವನು ಧರೆಗೆ ಧುಮ್ಮಿ
ಕ್ಕಿದನು ಕೌರವರಾಯ ವೈದೋ
ರಿದೆಯಲಾ ಕಲಿಯಾಗು ಪಾಲಿಸದಿರು ಪಲಾಯನವ
ರದನಿಗಳ ರೌದ್ರಾಹವಕೆ ಕೋ
ವಿದನಲೇ ಕೊಳ್ಳೆನುತ ಕರಿಗಳ
ಕೆದರಿದನು ಕಲಿಜೋದರಂಬಿನ ಸರಿಯ ಸೈರಿಸುತ ೬೧

ಏನ ಹೇಳುವೆನವನಿಪನ ಮುಂದ
ದಾನೆ ಮುರಿದವು ಭೀಮಸೇನನೊ
ವೈನತೇಯನೊ ಕರಿಗಳೋ ಕಾಳೋರಗನ ದಳವೊ
ಮಾನನಿಧಿ ಮುರಿವಡೆದನೈ ವೈ
ರಾನುಬಂಧದ ಬೇಗುದಿಯ ದು
ಮ್ಮಾನ ದಳವೇರಿದುದು ಹೇರಿತು ಭೀತಿ ಭೂಪತಿಗೆ ೬೨

ನೂರು ಗಜವಕ್ಕಾಡಲವನಿಪ
ನೇರಿದನು ವಾರುವನನೆಡದಲಿ
ಜಾರಿದನು ಸೂಠಿಯಲಿ ದುವ್ವಾಳಿಸಿ ತುರಂಗಮವ
ಆರು ಸಾವಿರ ಕುದುರೆ ರಥವೈ
ನೂರು ಗಜಘಟೆ ನೂರು ಮೂವ
ತ್ತಾರು ಸಾವಿರ ಪಾಯದಳದಲಿ ಬಂದನಾ ಶಕುನಿ ೬೩

ಶಕುನಿ ಕಂಡನು ಕೌರವೇಂದ್ರನ
ನಕಟ ನೀನೇಕಾಂಗದಲಿ ಹೋ
ರಿಕೆಗೆ ಬಂದ್ಯೆ ಗರುವ ಗುರುಸುತ ಭೋಜ ಗೌತಮರು
ಸಕಲಬಲ ನುಗ್ಗಾಯ್ತು ಸಮುಸ
ಪ್ತಕರು ನಿನ್ನಯ ಮೂಲಬಲವಿದೆ
ವಿಕಳನಾಗದಿರೆಂದು ಸಂತೈಸಿದನು ಕುರುಪತಿಯ ೬೪

ದಳಪತಿಯು ಪವಡಿಸಿದನರಸನ
ಸುಳಿವು ಸಿಲುಕಿತು ಭಯದ ಬಲೆಯಲಿ
ಮೊಳಗುತದೆ ನಿಸ್ಸಾಳ ಸುಮ್ಮಾನದಲಿ ರಿಪುಬಲದ
ಉಳಿದರೋ ಗುರುಸೂನು ಕೃಪರೇ
ನಳಿದರೋ ಪಾಳೆಯದೊಳಗೆ ರಥ
ವಿಳಿದರೋ ತಾನೇನೆನುತ ಚಿಂತಿಸಿತು ಕುರುಸೇನೆ ೬೫

ಕೂಡೆ ಹರಿಹಂಚಾದ ಸುಭಟರು
ಕೂಡಿಕೊಂಡುದು ನೊಂದು ನಸಿದವ
ರೋಡಿದವರೊಗ್ಗಾಯ್ತು ಕುರುರಾಯನ ಪರೋಕ್ಷದಲಿ
ನೋಡಲಹುದಾಹವದೊಳಗೆ ಕೈ
ಮಾಡಿಸಿದ ವಸುಂಧಾಂಗನೆಗೆ ಬೆಲೆ
ಮಾಡುವುದು ಮತವೆಂದು ಕವಿದುದು ಮತ್ತೆ ಕುರುಸೇನೆ ೬೬

ಬಿಡದಲಾ ಕುರುಸೈನ್ಯ ಹಕ್ಕಲು
ಗಡಿಯ ಭಟರೊಗ್ಗಾಯ್ತಲಾ ದೊರೆ
ಮಡಿದನೋ ಬಳಲಿದನೊ ಮಿಗೆ ಪೂರಾಯಘಾಯವಲಿ
ಪಡೆಯ ಜಂಜಡ ನಿಲಲಿ ಕೌರವ
ರೊಡೆಯನಾವೆಡೆ ನೋಡು ನೋಡೆಂ
ದೊಡನೊಡನೆ ಪವಮಾನಸುತನರಸಿದನು ಕುರುಪತಿಯ ೭೭

ಅರಸ ಕೇಳ್ಳೆ ಕೌರವೇಂದ್ರನ
ನರಸುತರ್ಜುನ ಭೀಮ ಸಾತ್ಯಕಿ
ಧರಣಿಪತಿ ಸಹದೇವ ನಕುಲರು ಕೂಡೆ ಕಳನೊಳಗೆ
ತಿರುಗಿದರು ಬಳಿಕಿತ್ತಲೀ ಸೋ
ಹರವ ಧೃಷ್ಟದ್ಯುಮ್ನ ಸೃಂಜಯ
ರೊರಸಿದರು ನಿಶ್ಶೇಷ ಕೌರವನೃಪಚತುರ್ಬಲವ ೭೮

ಧರಣಿಪತಿ ಕೇಳಿನ್ನು ಮೇಲಣ
ಧುರದ ವೃತ್ತಾಂತವನು ಕುರುಪತಿ
ಯಿರವನರಿಯೆನು ಕಂಡು ಬಹೆನೇ ನೇಮವೇ ತನಗೆ
ಗುರುಸುತನು ಕೃಪ ಭೋಜ ಶಕುನಿಗ
ಳರಸನನು ಪರಿವೇಷ್ಟಿಸಿದರದ
ನರಿದು ಬಹೆನೆನೆ ಕಳುಹಿದನು ಧೃತರಾಷ್ಟ್ರ ಸಂಜಯನ ೭೯

ಎರಡನೆಯ ಸಂಧಿ

ಸೂ. ಸಕಲಬಲ ನುಗ್ಗಾಯ್ತು ಸಮಸ
ಪ್ತಕರು ಮಡಿದರು ಪಾರ್ಥಶರದಲಿ
ಶಕುನಿಯನು ಸಂಗ್ರಾಮದಲಿ ಸೀಳಿದನು ಸಹದೇವ

ಕೇಳು ಜನಮೇಜಯ ಧರಿತ್ರೀ
ಪಾಲ ಸಂಜಯ ಬಂದು ಕುರುಭೂ
ಪಾಲಕನನರಸಿದನು ಸಂಗರ ರಂಗಭೂಮಿಯಲಿ
ಮೇಲುಸುಯಿಧಾನದ ತುರಂಗಮ
ಜಾಲ ಸಹಿತಗಲದಲಿ ಕುರುಭೂ
ಪಾಲನಾವೆಡೆಯೆನುತ ಬೆಸಗೊಳುತರಸಿದನು ನೃಪನ ೧

ವಂದಿಗಳ ನಿಸ್ಸಾಳಬಡಿಕರ
ಮಂದಿ ಹಡಪಿಗ ಚಾಹಿ ಸೂತರ
ಸಂದಣಿಗಳೌಷಧಿಕ ಹಯಗಜಸಂವಿಧಾಯಕರು
ನಿಂದುದದು ಸಂಖ್ಯಾತವಿನಿಬರ
ನಂದು ಸಂಜಯ ಕರೆದು ಕೇಳಿದ
ನಿಂದುಕುಲಸಂಭವನ ಕಂಡಿರೆ ಕೌರವೇಶ್ವರನ ೨

ಕೂಡೆ ಸಂಜಯನರಸಿದನು ನಡೆ
ಜೋಡಿನವು ನಾನೂರು ಕುದುರೆಯ
ಕೂಡಿ ಕೌರವನೃಪನ ಕಾಣದೆ ಕಳನ ಚೌಕದಲಿ
ನೋಡುತಿರೆ ಸಾತ್ಯಕಿ ಚತುರ್ಬಲ
ಗೂಡಿ ಕವಿದನು ಹಯಬಲವ ಹುಡಿ
ಮಾಡಿದನು ನಾನೂರ ಕೊಂದನು ಸರಳ ಸಾರದಲಿ ೩

ಹಿಡಿದು ಸಂಜಯನನು ವಿಭಾಡಿಸಿ
ಕೆಡಹಿದನು ಬಲುರಾವುತರನವ
ಗಡವ ಕೇಳಿದು ದ್ರೋಣಸುತ ಕೃತವರ್ಮ ಗೌತಮರು
ಘಡಘಡೆಲವೊ ಸಂಜಯನ ಬಿಡು
ಬಿಡು ಮದೀಯ ಮಹಾಶರಕೆ ತಲೆ
ಗೊಡುವಡಿದಿರಾಗೆನುತ ತರುಬಿದರಿವರು ಸಾತ್ಯಕಿಯ ೪

ದ್ರೋಣಸುತ ಕುರುಪತಿಯ ಸಮರಕೆ
ಹೂಣಿಗನಲೇ ಬಲ್ಲೆವಿದರಲಿ
ಬಾಣವಿದ್ಯೆಯ ಬೀರಿ ಬಿಡಿಸುವರಿವರು ಸಂಜಯನ
ಕಾಣಲಹುದಂತಿರಲಿ ನಿಮಗೀ
ಕೇಣದಲಿ ಫಲವಿಲ್ಲ ಕೃಪ ತ
ನ್ನಾಣೆ ನೀ ಮರುಳೆಂದು ಸಾತ್ಯಕಿ ಸುರಿದನಂಬುಗಳ ೫

ಕೋಡಕಯ್ಯಲಿ ತಿರುಗಿ ಕೃಪ ಕೈ
ಮಾಡಿದನು ಕೃತವರ್ಮನೆಸುಗೆಯ
ತೋಡುಬೀಡಿನ ಭರವ ಬಲ್ಲವನಾರು ಸಮರದಲಿ
ನೋಡಲೀತನ ಗರುಡಿಯಲಿ ಶ್ರವ
ಮಾಡಿದವರೇ ಮೂರು ಜಗವ ವಿ
ಭಾಡಿಸುವರೆನೆ ಹೊಗಳ್ವನಾವನು ದ್ರೋಣನಂದನನ ೬

ಎಚ್ಚನಶ್ವತ್ಥಾಮನಾ ಕೃಪ
ನೆಚ್ಚನಾ ಕೃತವರ್ಮಕನು ಕವಿ
ದೆಚ್ಚನೀ ಶರಜಾಲ ಜಡಿದವು ಕಿಡಿಯ ಗಡಣದಲಿ
ಬೆಚ್ಚಿದನೆ ಬೆದರಿದನೆ ಕೈಕೊಂ
ಡೆಚ್ಚು ಸಾತ್ಯಕಿ ರಿಪುಶರಾಳಿಯ
ಕೊಚ್ಚಿದನು ಕೊಡಹಿದನು ಮಿಗೆ ಭಂಗಿಸಿ ವಿಭಾಡಿಸಿದ ೭

ಎಲೆಲೆ ಸಾತ್ಯಕಿಗಾಹವದ ಧುರ
ಬಲುಹೆನಲು ಸೃಂಜಯರು ಸೋಮಕ
ಬಲ ಶಿಖಂಡಿ ದ್ರುಪದನಂದನ ಪಾಂಡವಾತ್ಮಜರು
ಚಳಪತಾಕೆಯ ವಿವಿಧವಾದ್ಯದ
ಕಳಕಳದ ಕೈದುಗಳ ಹೊಳಹಿನ
ತಳಪ ಝಳಪಿಸೆ ಜೋಡಿಸಿತು ಸಾತ್ಯಕಿಯ ಬಳಸಿನಲಿ ೮

ಹರಿಯದಿಲ್ಲಿಯ ಬವರ ರಾಯನ
ನರಸಬೇಹುದು ಕುರುಪತಿಯ ಮುಂ
ದಿರಿದು ಮೆರೆವುದು ಕೀರ್ತಿ ನಿಷ್ಫಲವಿಲ್ಲ ಶರರಚನೆ
ಅರಿವೆವೀ ಸಾತ್ಯಕಿಯ ಸಮರದ
ಮುರುಕವನು ಬಳಿಕೆನುತ ಕೌರವ
ನರಿಕೆಯಲಿ ತಿರುಗಿದರು ಕೃಪ ಕೃತವರ್ಮ ಗುರುಸುತರು ೯

ತೆರಳಿದರು ಗುರುನಂದನಾದಿಗ
ಳರಿನೃಪಾಲನ ಕಾಣೆವಾತನ
ನರಸಬೇಹುದು ಶಕುನಿ ದುರ್ಯೋಧನ ಸುಶರ್ಮಕರು
ದೊರೆಗಳಿದು ಪರಿಶಿಷ್ಟರುಪಸಂ
ಹರಣವೇ ಕರ್ತವ್ಯವಿದು ದು
ಸ್ತರಣಶ್ರಮಂಫಲವೆಂದು ನುಡಿದನು ಧರ್ಮಸುತ ನಗುತ ೧೦

ಮಸಗಿದುದು ಪರಿವಾರ ಕೌರವ
ವಸುಮತೀಶ್ವರನರಕೆಯಲಿ ದಳ
ಪಸರಿಸಿತು ಬಿಡದರಸಿ ಕಂಡರು ಕಳನ ಮೂಲೆಯಲಿ
ಮಿಸುಪ ಸಿಂಧದ ಸೀಗುರಿಯ ಝಳ
ಪಿಸುವಡಾಯ್ದ ಸಿತಾತಪತ್ರ
ಪ್ರಸರದಲಿ ಹೊಳೆಹೊಳೆವ ಶಕುನಿಯ ಬಹಳ ಮೋಹರವ ೧೧

ಅದೆ ಸುಯೋಧನನೊಡ್ಡು ನಸುಂದೊ
ರದಲಿ ಕವಿಕವಿಯೆನುತ ಧಾಳಿ
ಟ್ಟುದು ಚತುರ್ಬಲ ಭೀಮಪಾರ್ಥರ ರಥದ ಚೂಣಿಯಲಿ
ಹೊದರು ಹಳಚಿತು ಭಟರು ಭುಜಗ
ರ್ವದಲಿ ಗರುವರ ಗಾಢ ಶೌರ್ಯದ
ಮದಕೆ ಮಡಮುರಿಯಾಯ್ತು ಸಿಲುಕಿತು ಮಾನ ಮೋನದಲಿ ೧೨

ಹೆಗಲ ಹಿರಿಯುಬ್ಬಣದ ಕೈತಳ
ಮುಗುಚಲಮ್ಮದ ವಾಘೆಯಲಿ ಕೈ
ಬಿಗಿದುದಂಕಣೆದೊಡಕಿನಲಿ ಮರನಾದವಂಘ್ರಿಗಳು
ಬಗೆಯ ಮಡಿ ಮಸಳಿಸಿತು ವೀರಕೆ
ಬೆಗಡು ಹದುವನೆಯಾಯ್ತು ಕೈನಂ
ಬುಗೆಗೆ ಮರಳಿದರೊಬ್ಬರೊಬ್ಬರು ರಾಯರಾವುತರು ೧೩

ಬಂದುದಾ ಮೋಹರ ಸಘಾಡದಿ
ನಿಂದುದೀ ಬಲ ಸೂರಿಯಲಿ ಹಯ
ವೃಂದ ಬಿಟ್ಟವು ತೂಳಿದವು ಹೇರಾನೆ ಸರಿಸದಲಿ
ನೊಂದುದಾಚೆಯ ಭಟರು ಘಾಯದೊ
ಳೊಂದಿತೀಚೆಯ ವೀರರುಭಯದ
ಮಂದಿ ಬಿದ್ದುದು ಚೂಣಿಯದ್ದುದು ರುಧಿರಜಲಧಿಯಲಿ ೧೪

ಜಾರಿದನೆ ಕುರುಪತಿಯಕಟ ಮೈ
ದೋರನೇ ನಮಗೂರುಗಳ ಕೊಡ
ಲಾರದೇ ಕಾಳೆಗವ ಕೊಟ್ಟನು ಮತ್ತೆ ಕೊಂಡನಲಾ
ತೋರಿಸನೆ ಖಂಡೆಯದ ಸಿರಿ ಮೈ
ದೋರಹೇಳೋ ಕರೆಯೆನುತ ತಲೆ
ದೋರಿದರು ಭೀಮಾರ್ಜುನರು ಸೌಬಲನ ಥಟ್ಟಿನಲಿ ೧೫

ಫಡಫಡೆಲವೋ ಪಾರ್ಥ ಕುರುಪತಿ
ಯಡಗುವನೆ ನಿನ್ನಡಗ ತರಿದುಣ
ಬಡಿಸನೇ ವೇತಾಳರಿಗೆ ವೈತಾಳಿಕನೆ ನೀನು
ಗಡಬಡಿಸಿ ಪರರುನ್ನತಿಯ ಕೆಡೆ
ನುಡಿದು ಫಲವೇನೆನುತ ಪಾರ್ಥನ
ತಡೆದನಂದು ಸುಶರ್ಮ ಸಮಸಪ್ತಕರ ದಳ ಸಹಿತ ೧೬

ಮುತ್ತಿದವು ರಥವೇಳನೂರರು
ವತ್ತು ಹಯವೈನೂರು ಸಾವಿರ
ಮತ್ತಗಜವಿಪ್ಪತ್ತು ಸಾವಿರ ಪಾಯದಳ ಸಹಿತ
ತೆತ್ತಿಸಿದವಂಬುರವಣಿಸಿ ದೂ
ಹತ್ತಿ ಹೊಳೆದವು ಸಮರದಲಿ ಮುಖ
ಕೆತ್ತುದೆನೆ ಕೈದುಗಳ ರುಚಿ ವೇಢೈಸಿತರ್ಜುನನ ೧೭

ಶಕುನಿ ಸಹದೇವನನುಳೂಕನು
ನಕುಲನನು ಕುರುರಾಯನನುಜರು
ಚಕಿತ ಚಾಪನ ಕೆಣಕಿದರು ಪವಮಾನನಂದನನ
ಅಕಟ ಫಲುಗುಣ ಎನುತ ಸಮಸ
ಪ್ತಕರು ಕವಿದರು ನೂರು ಗಜದಲಿ
ಸಕಲದಳಕೊತ್ತಾಗಿ ನಿಂದನು ಕೌರವರರಾಯ ೧೮

ಏರಿದರು ಸಮಸಪ್ತಕರು ಕೈ
ದೋರಿದರು ಫಲುಗುಣನ ಜೋಡಿನೊ
ಳೇರು ತಳಿತುದು ನೊಂದವಡಿಗಡಿಗಾತನಶ್ವಚಯ
ನೂರು ಶರದಲಿ ಬಳಿ ವಿಶಿಖ ನಾ
ನೂರರಲಿ ಬಳಿಶರಕೆ ಬಳಿಶರ
ವಾರು ಸಾವಿರದಿಂದ ತರಿದನು ಪಾರ್ಥನರಿಬಲವ ೧೯

ಕಡಿವಡೆದವೇಳ್ನೂರು ರಥ ಮುರಿ
ವಡೆದವೈನೂರಶ್ವಚಯ ಮುಂ
ಗೆಡೆದವಂದೈನೂರು ಗಜವಿಪ್ಪತ್ತು ಸಾವಿರದ
ಕಡುಗಲಿಗಳುದುರಿತು ತ್ರಿಗರ್ತರ
ಪಡೆ ಕುರುಕ್ಷೇತ್ರದಲಿ ಪಾರ್ಥನ
ಬಿಡದೆ ಬಳಲಿಸಿಯನಿಬರಳಿದುದು ಭೂಪ ಕೇಳೆಂದ ೨೦

ದೊರೆಗಳವರಲಿ ಸತ್ಯಕರ್ಮನು
ವರ ಸುಶರ್ಮನು ದ್ರೋಣಸಮರದೊ
ಳೆರಡನೆಯ ದಿವಸದಲಿ ರಚಿಸಿದರಗ್ನಿ ಸಾಕ್ಷಿಕವ
ಧುರದ ಶಪಥದೊಳರ್ಜುನನ ಸಂ
ಗರಕೆ ಬೇಸರಿಸಿದ ಪರಾಕ್ರಮ
ಪರಿಗತರು ಪವಡಿಸಿದರಂದು ಧನಂಜಯಾಸ್ತ್ರದಲಿ ೨೧

ತರಿದನಗ್ಗದ ಸತ್ಯಕರ್ಮನ
ಧುರವ ಸಂತೈಸುವ ತ್ರಿಗರ್ತರ
ದೊರೆ ಸುಶರ್ಮನನವನ ಸಹಭವ ಗೋತ್ರ ಬಾಂಧವರ
ಒರಸಿದನು ಕುರುರಾಯನಾವೆಡೆ
ಬರಲಿ ತನ್ನಾಪ್ತರಿಗೆ ಕೊಟ್ಟೆನು
ಹರಿವನಿನ್ನಾಹವ ವಿಲಂಬವ ಮಾಡಬೇಡೆಂದ ೨೨

ಇತ್ತ ಭೀಮನ ಕೂಡೆ ನೂರರು
ವತ್ತು ಗಜ ಸಹಿತರಿಭಟರೊಳಂ
ದ್ವೃತ್ತನಿದಿರಾದನು ಸುದರ್ಶನನಂಧನೃಪಸೂನು
ಹೆತ್ತಳವ್ವೆ ವಿರೋಧಿಸೇನೆಯ
ಮುತ್ತ ಗಜಘಟೆಗೋಸುಗರವಿವು
ಮತ್ತೆ ದೊರಕವು ಕೊಂದವೆಂದುಮ್ಮಳಿಸಿದನು ಭೀಮ ೨೩

ಸೊಕ್ಕಿದಾನೆಯ ಕೈಯ ಕದಳಿಯ
ನಿಕ್ಕಿ ಬಿಡಿಸುವನಾರು ಪವನಜ
ನೆಕ್ಕತುಳದಲಿ ದಂತಿಘಟೆಗಳ ಮುರಿದನುರವಣಿಸಿ
ಇಕ್ಕಡಿಯ ಬಸುರುಚ್ಚುಗಳ ನರ
ಸುಕ್ಕುಗಳ ನಾಟಕದವೊಲು ಕೈ
ಯಿಕ್ಕಿದಾನೆಯ ಹಿಂಡು ಮುರಿದುದು ನಿಮಿಷಮಾತ್ರದಲಿ ೨೪

ಕೆಡಹಿ ದುರ್ಯೋಧನನ ತಮ್ಮನ
ನಡಗುಂದರಿ ಮಾಡಿದನುಳೂಕನ
ಕಡಿದು ಬಿಸುಟನು ನಕುಲನಿಪ್ಪತ್ತೈದು ಬಾಣದಲಿ
ತಡುಕಿದನು ಸಹದೇವನಂಬಿನ
ಗಡಣದಲಿ ಸೌಬಲನ ಸೇನೆಯ
ಕಡಲ ಮೊಗೆದನು ಮೋದಿದನು ಶರಜಾಲ ಝುಂಕೃತಿಯ ೨೫

ಎಲವೊ ಕಪಟದ್ಯೂತ ಬಂಧದೊ
ಳಳಲಿಸಿದಲಾ ಪಾಪಿ ಕೌರವ
ಕುಲದ ತಲೆ ಸೆಂಡಾಡಿದವ ನೀನೋ ಮದಗ್ರಜನೊ
ಸಿಲುಕಿದೆಯಲಾ ನಮ್ಮ ಬಾಣದ
ಬಲೆಗೆ ನಿನ್ನನು ಕಾವನಾವವ
ನೆಲೆ ಕುಠಾರ ಎನುತ್ತ ನುಡಿದನು ನಗುತ ಸಹದೇವ ೨೬

ವ್ಯರ್ಥವಲೆ ಸಹದೇವ ನಿನ್ನ ಕ
ದರ್ಥನಕೆ ಫಲವಿಲ್ಲ ನೀ ಕದ
ನಾರ್ಥಿಯೇ ದಿಟ ತೋರಿಸಾದರೆ ಬಾಹುವಿಕ್ರಮವ
ಪಾರ್ಥ ಭೀಮರ ಮರೆಯೊಳಿರ್ದು ನಿ
ರರ್ಥಕರನಿರಿದಿರಿದು ಜಯವ ಸ
ಮರ್ಥಿಸುವೆ ಫಡ ಹೋಗೆನುತ ತೆಗೆದೆಚ್ಚನಾ ಶಕುನಿ ೨೭

ಮರುಗದಿರು ನಿನ್ನುಭಯ ಪಕ್ಷವ
ತರಿದು ತುಂಡವ ಸೀಳುವೆನು ತಾ
ಮರೆವೆನೇ ಭವದೀಯ ರಚಿತ ವಿಕಾರ ವಿಭ್ರಮವ
ನೆರೆ ಪತತ್ರಿಗಳಿವೆ ಪತತ್ರಿಯ
ಮರುವೆಸರು ನಿನಗಿವರ ಕೇಣಿಗೆ
ತೆರಹುಗೊಡು ನೀನೆಂದು ಮಾದ್ರೀತನುಜ ಮುಗುಳೆಚ್ಚ ೨೮

ಎಸಲು ಸಹದೇವಾಸ್ತ್ರವನು ಖಂ
ಡಿಸಿ ಶರೌಘದಿನಹಿತವೀರನ
ಮುಸುಕಿದನು ಮೊನೆಗಣೆಗಳೀಡಿರಿದವು ರಥಾಗ್ರದಲಿ
ಕುಸುರಿದರಿದತಿರಥನ ಬಾಣ
ಪ್ರಸರವನು ರಥ ತುರಗವನು ಭಯ
ರಸದೊಳದ್ದಿದನುದ್ದಿದನು ಸಹದೇವ ಸೌಬಲನ ೨೯

ತೇರು ಹುಡಿಹುಡಿಯಾಗೆ ಹೊಯ್ದನು
ವಾರುವನ ಮೇಲುಗಿದಡಾಯುಧ
ದಾರುಭಟೆಯಲಿ ಬಿಟ್ಟನಾ ಸಹದೇವನಭಿಮುಖಕೆ
ವೀರನಹೆಯೋ ಶಕುನಿ ಜೂಜಿನ
ಚೋರವಿದ್ಯೆಯ ಬಿಟ್ಟೆಲಾ ಜು
ಜ್ಝಾರನಹೆ ಮುಝು ಪೂತೆನುತ ಖಂಡಿಸಿದನಾ ಹಯವ ೩೦

ಬಳಿಕ ಕಾಲಾಳಾಗಿ ಖಡುಗವ
ಝಳಪಿಸುತ ಬರೆ ಶಕ್ತಿಯಲಿ ಕೈ
ಚಳಕ ಮಿಗೆ ಸಹದೇವನಿಟ್ಟನು ಸುಬಲನಂದನನ
ಖಳನೆದೆಯನೊದೆದಪರಭಾಗಕೆ
ನಿಲುಕಿತದು ಗಾಂಧಾರಬಲ ಕಳ
ವಳಿಸೆ ಸುಳಿದನು ಶಕುನಿ ಸುರತರುಣಿಯರ ತೋಳಿನಲಿ ೩೧

ಕವಿದುದಾ ಪರಿವಾರ ವಡಬನ
ತಿವಿವ ತುಂಬಿಗಳಂತೆ ಶಕುನಿಯ
ಬವರಿಗರು ಮುಂಡಳಿಸೆ ಸಹದೇವನ ರಥಾಗ್ರದಲಿ
ತೆವರಿಸಿದನನಿಬರ ಚತುರ್ಬಲ
ನಿವಹವನು ನಿಮಿಷಾರ್ಧದಲಿ ಸಂ
ತವಿಸಿದನು ಸಹದೇವ ಕೊಂದನು ಸೌಬಲನ ಬಲವ ೩೨

ಹರಿಬದಲಿ ಹೊಕ್ಕೆರಡು ಸಾವಿರ
ತುರಗ ಬಿದ್ದವು ನೂರು ಮದಸಿಂ
ಧುರಕೆ ಗಂಧನವಾಯ್ತು ಪಯದಳವೆಂಟು ಸಾವಿರದ
ಬರಹ ತೊಡೆದುದು ನೂರು ರಥ ರಿಪು
ಶರದೊಳಕ್ಕಾಡಿತು ವಿಡಂಬದ
ಕುರುಬಲಾಂಬುಧಿ ಕೂಡೆ ಬರತುದು ನೃಪತಿ ಕೇಳೆಂದ ೩೩

ಓಡಿದವರಲ್ಲಲ್ಲಿ ಧೈರ್ಯವ
ಮಾಡಿ ಹರಿಹಂಚಾದ ಸುಭಟರು
ಕೂಡಿಕೊಂಡುದು ನೂರು ಮದದಾನೆಯಲಿ ಕುರುಪತಿಯ
ಓಡಲೇಕಿನ್ನೊಂದು ಹಲಗೆಯ
ನಾಡಿ ನೋಡುವೆನೆಂಬವೊಲು ಕೈ
ಮಾಡಿದನು ಕುರುರಾಯನಾ ಸಹದೇವನಿದಿರಿನಲಿ ೩೪

ಧರಣಿಪನ ಥಟ್ಟಣೆಗೆ ನಿಲ್ಲದೆ
ತೆರಳಿದನು ಸಹದೇವನಾತನ
ಹಿರಿಯನಡ್ಡೈಸಿದಡೆ ಕೊಟ್ಟನು ಬೋಳೆಯಂಬಿನಲಿ
ಶರಹತಿಗೆ ಸೆಡೆದಾ ನಕುಲ ಪೈ
ಸರಿಸಿದನು ನೂರಾನೆಯಲಿ ಡಾ
ವರಿಸಿದನು ಧರ್ಮಜನ ದಳದಲಿ ಧೀರ ಕುರುರಾಯ ೩೫

ಎಲೆ ನಪುಂಸಕ ಧರ್ಮಸುತ ಫಡ
ತೊಲಗು ಕರೆಯಾ ನಿನಗೆ ಭೀಮನ
ಬಲುಹೆ ಬಲುಹರ್ಜುನನ ವಿಕ್ರಮ ವಿಕ್ರಮವು ನಿನಗೆ
ಮಲೆತು ಮೆರೆಯಾ ಕ್ಷತ್ರಧರ್ಮವ
ನಳುಕದಿರು ನೀ ನಿಲ್ಲೆನುತಲಿ
ಟ್ಟಳಿಸಿ ಬರಲೂಳಿಗದ ಬೊಬ್ಬೆಯ ಕೇಳಿದನು ಭೀಮ ೩೬

ತೂಳಿ ತುಳಿದವು ನೂರು ಗಜ ಭೂ
ಪಾಲಕನ ನೆರೆಗಡಿತದಡವಿಗೆ
ಬಾಳೆ ಹೆಮ್ಮರನಾಯ್ತು ಗಡ ಫಡ ನೂಕು ನೂಕೆನುತ
ಆಲಿ ಕಿಡಿಯಿಡೆ ಕುಣಿವ ಮೀಸೆ ಕ
ರಾಳ ವದನದ ಬಿಗಿದ ಹುಬ್ಬಿನ
ಮೇಲುಗೋಪದ ಭೀಮ ಬಂದನು ಬಿಟ್ಟ ಸೂಠಿಯಲಿ ೩೭

ನೆತ್ತಿಯಂಗತೆಯೊಳೂರಿದಂಕುಶ
ವೆತ್ತಿದಡೆ ತಲೆಗೊಡಹಿದವು ಬೆರ
ಳೊತ್ತಗಿವಿಗಳ ಡಾವರಿಪ ಡಾವರದ ಡಬ್ಬುಕದ
ಕುತ್ತುವಾರೆಯ ಬಗೆಯದಾನೆಗ
ಳಿತ್ತ ಮುರಿದವು ಸಿಂಹನಾದಕೆ
ಮತ್ತಗಜ ಮೊಗದಿರುಹಿದವು ದಳವುಳಿಸಿದನು ಭೀಮ ೩೮

ಮೆಟ್ಟಿದನು ಬಲವಂಕವನು ಹೊರ
ಗಟ್ಟಿದನು ವಾಮದ ಗಜಂಗಳ
ನಿಟ್ಟನೊಂದರೊಳೊಂದನಪ್ಪಳಿಸಿದನು ಪರಿಘದಲಿ
ಘಟ್ಟಿಸಿದನೊಗ್ಗಿನ ಗಜಂಗಳ
ಥಟ್ಟುಗೆಡಹಿದನಮಮ ಹೆಣಸಾ
ಲಿಟ್ಟವೈ ಕುರುನೃಪನ ನೂರಾನೆಗಳು ನಿಮಿಷದಲಿ ೩೯

ಉಳಿದುದಿದಿರಲಿ ಛತ್ರ ಚಮರಾ
ವಳಿಯುವರು ಹಡಪಿಗರು ಬಿರುದಾ
ವಳಿಯುವರು ಪಾಠಕರು ವಾದ್ಯದ ಮಲ್ಲಗಾಯಕರು
ಸಲಿಲ ಭಕ್ಷ್ಯವಿದಾನಗಜಹಯ
ಕುಲದ ರಕ್ಷವ್ರಣಚಿಕಿತ್ಸಕ
ದಳಿತ ರಥಚಾರಕರು ಕಾರ್ಮುಕಬಾಣದಾಯಕರು ೪೦

ಕುದುರೆ ರಾವ್ತರು ಜೋದಸಂತತಿ
ಮದಗಜವ್ರಜವತಿರಥಾವಳಿ
ಪದಚರರು ಚತುರಂಗಬಲವೊಂದುಳಿಯದಿದರೊಳಗೆ
ಪದದಲೇ ಕೌರವನೃಪತಿ ಜಾ
ರಿದನು ಕುಂತೀಸುತರು ಬಹಳಾ
ಭ್ಯುದಯರಾದರು ವೀರನಾರಾಯಣನ ಕರುಣದಲಿ ೪೧

ಮೂರನೆಯ ಸಂಧಿ

ಸೂ. ರಾಯದಳ ಸಲೆ ಸವೆಯೆ ಸಮರದ
ನಾಯಕರು ನೆರೆ ಮುರಿಯಲಾ ದ್ವೈ
ಪಾಯನ ಸರೋವರವ ಹೊಕ್ಕನು ಕೌರವರ ರಾಯ

ಕೇಳು ಜನಮೇಜಯಧರಿತ್ರೀ
ಪಾಲ ಕುರುಪತಿ ಹೆಗಲ ಗದೆಯಲಿ
ಕಾಲುನಡೆಯಲಿ ಹಾಯ್ದನೇಕಾಂಗದಲಿ ಕಳನೊಳಗೆ
ಆಳ ಕಾಣೆನು ಛತ್ರ ಚಮರದ
ವೀಳೆಯದ ವಿಸ್ತಾರವಿಭವವ
ಬೀಳುಕೊಟ್ಟನು ನಡೆದನಿಂದ್ರ ದಿಶಾಭಿಮುಖವಾಗಿ ೧

ಅಕಟ ನಮ್ಮಯ ಪೂರ್ವರಾಜ
ಪ್ರಕರಕೀ ವಿಧಿಯಾಯ್ತಲಾ ಕಂ
ಟಕನಲಾ ಧರ್ಮಪ್ರಭಾವಕೆ ಕೌರವೇಶ್ವರನು
ಶಕುನಿಮತ ವಿಷಬೀಜವೇ ಬಾ
ಧಕವ ತಂದುದಲಾ ಯುಧಿಷ್ಠಿರ
ಸಕಲ ಬಲ ಪರಿಶೇಷವೇನೆಂದರಸ ಬೆಸಗೊಂಡ ೨

ಧರಣಿಪತಿ ಕೇಳ್ ಧರ್ಮಜನ ಮೋ
ಹರದೊಳುಳಿದುದು ತೇರು ಸಾವಿರ
ವೆರಡು ಗಜವೇಳ್ನೂರು ಮಿಕ್ಕುದು ಲಕ್ಕ ಪಾಯದಳ
ತುರಗ ಸಾವಿರವೈದು ಸಾತ್ಯಕಿ
ವರ ಯುಧಾಮನ್ಯೂತ್ತಮೌಂಜಸ
ರುರು ಶಿಖಂಡಿ ದ್ರುಪದಸೂನು ದ್ರೌಪದೀಸುತರು ೩

ಆ ಸುಯೋಧನ ಸೇನೆಯಲಿ ಧರ
ಣೀಶ ಕೃಪ ಕೃತವರ್ಮ ಗುರುಸುತ
ರೈಸುಬಲದಲಿ ನಾಲ್ವರುಳಿದರು ಹೇಳಲೇನದನು
ಏಸು ಬಲವೆನಿತೈಶ್ವರಿಯವಿ
ದ್ದೇಸು ಭಟರೆನಿತಗ್ಗಳೆಯರಿ
ದ್ದೇಸರಲಿ ಫಲವೇನು ದೈವವಿಹೀನರಿವರೆಂದ ೪

ಇತ್ತಲೀ ಸಂಜಯನ ತಂದುದು
ಮೃತ್ಯು ಧೃಷ್ಟದ್ಯುಮ್ನನೀತನ
ಕುತ್ತಿ ಕೆಡಹಿದಡಾಗದೇ ಕುರುಡಂಗೆ ರಣರಸವ
ಬಿತ್ತರಿಸುವನು ಕೌರವನ ಜಯ
ದತ್ತಲೆರಕ ದುರಾತ್ಮನನು ಕೈ
ವರ್ತಿಸಾ ಯಮನಗರಿಗೆಂದನು ಸಾತ್ಯಕಿಯ ಕರೆದು ೫

ಸೆಳೆದಡಾಯ್ದವ ಸಂಜಯನ ಹೆಡ
ತಲೆಗೆ ಹೂಡಿದನರಿವ ಸಮಯಕೆ
ಸುಳಿದನಗ್ಗದ ಬಾದರಾಯಣನವನ ಪುಣ್ಯದಲಿ
ಎಲೆಲೆ ಸಾತ್ಯಕಿ ಲೇಸುಮಾಡಿದೆ
ಖಳನೆ ಸಂಜಯನೆಮ್ಮ ಶಿಷ್ಯನ
ಕೊಲುವುದೇ ನೀನೆನುತ ಕೊಂಡನು ಕೊರಳಡಾಯುಧವ ೬

ದೇವ ನಿಮ್ಮಯ ಶಿಷ್ಯನೇ ಪರಿ
ಭಾವಿಸೆನು ತಾನರಿದೆನಾದಡೆ
ದೇವಕೀಸುತನಾಣೆ ಬಿಟ್ಟೆನು ಸಂಜಯನ ವಧೆಯ
ನೀವು ಬಿಜಯಂಗೈವುದೆನೆ ಬದ
ರಾವಳೀಮಂದಿರಕೆ ತಿರುಗಿದ
ನಾ ವಿಗಡಮುನಿ ಖೇದಕಲುಷಿತ ಸಂಜಯನ ತಿಳುಹಿ ೭

ಅರಸ ಕೇಳೈ ಸಂಜಯನು ಬರ
ಬರಲು ಕಂಡನು ದೂರದಲಿ ನಿರಿ
ಗರುಳ ಕಾಲ್ದೊಡಕುಗಳ ಖಂಡದ ಜಿಗಿಯ ಜಾರುಗಳ
ಕರಿಗಳೊಟ್ಟಿಲನೇರಿಳಿದು ಪೈ
ಸರಿಸಿ ಮಿದುಳಿನ ಜೋರು ಜೊಂಡಿನ
ತೊರಳೆಯಲಿ ದಡದಡಿಸಿ ಜಾರುತ ಬೀಳುತೇಳುವನ ೮

ಎಡಮುದಲೆಗಳ ದಾಂಟಿ ರಕುತದ
ಮಡುವಿನಲಿ ಗದೆಯೂರಿ ನೆಲೆಗಳ
ಪಡೆಮು ಕಂಪಿಸಿ ಕುಣಿವ ಮುಂದವ ಗದೆಯುಲಪ್ಪಳಿಸಿ
ಅಡಿಗಡಿಗೆ ಹೇರಾನೆಗಳ ಹೇ
ರೊಡಲ ಹತ್ತಿಳಿದೇರಿ ರ್ಘೊಂಪಿಸಿ
ಮಿಡುಕಿ ನಿಲುವನು ಬಳಲಿದೂರ್ಧ್ವಶ್ವಾಸ ಲಹರಿಯಲಿ ೯

ಓಡದಿಹ ನರಿ ಹದ್ದು ಕಾಗೆಗೆ
ಕೂಡ ಗದೆಯನು ಬೀಸುವನು ಬಿಡೆ
ನೋಡುವನು ಹೆಣದಿನಿಹಿಗಳ ಹೇರಾಳ ರಕ್ಕಸರ
ತೋಡುಗೈಗಳ ಮಿದುಳ ಬಾಯ್ಗಳ
ಬಾಡುಗರುಳಿನ ಚೀತ್ಕೃತಿಯ ತಲೆ
ಯೋಡುಗಳ ತನಿರಕುತ ಪಾನದ ಶಾಕಿನೀಜನವ ೧೦

ಕಂದ ಪಖ್ಖುಲೆಗಳಲಿ ತೀವಿದ
ಮಂದ ರಕುತದ ತೋದ ತಲೆಗಳ
ತಿಂದು ಬಿಸುಡುವ ನೆಣನ ಕಾರುವ ಬಸೆಯ ಬಾಡಿಸುವ
ಸಂದಣಿಸಿ ಹರಿದೇರ ಬಾಯ್ಗಳೊ
ಳೊಂದಿ ಬಾಯ್ಗಳನಿಡುವ ಪೂತನಿ
ವೃಂದವನು ಕಂಡೋಸರಿಸುವನದೊಂದು ದೆಸೆಗಾಗಿ ೧೧

ಕುಣಿವ ಕರಿಗಳ ತಲೆಯ ಮಡುಹಿನ
ಲಣೆದು ಹಜ್ಜೆಯನಿಡುತ ಭೂತದ
ಹೆಣನ ತೀನಿಗೆ ತವಕಿಸುವ ವೇತಾಳ ಸಂತತಿಯ
ರಣದೊಳಂಜಿಸಿ ಸೆರೆನರದ ಕಾ
ವಣದೊಳಗೆ ಕೈಯೂರಿ ಮಿಗೆ ಹಳ
ವೆಣನ ಹೊಲಸಿಗೆ ಹೇಸಿ ಹರಿದಡಿಗಡಿಗೆ ಸುಯ್ಯುವನ ೧೨

ಕಡಿವಡೆದ ಹಕ್ಕರಿಕೆ ರೆಂಚೆಯ
ತಡಿಗಳಲಿ ಕುಳ್ಳಿರ್ದ ಮೊಣಕಾ
ಲ್ಗಡಿಯ ಗಾಢವ್ರಣದ ನೆಣವಸೆಗೆಸರ ಬಳಿಬಳಿದು
ಗಡಣ ಹೆಣದೆರಹುಗಳೊಳಗೆ ಕಾ
ಲಿಡುತ ಸೋದಿಸಿ ಮುಂದೆ ಹೆಜ್ಜೆಯ
ನಿಡುತ ಪೈಸರವೋಗಿ ಮಾರ್ಗಶ್ರಮಕೆ ಬೆಮರುವನ ೧೩

ಕಡಿದ ಕೈದುಗಳೊಟ್ಟಿಲಲಿ ತನಿ
ಗೆಡೆದ ಗಾಲಿಯ ಹಾಯ್ಕಿ ಮೆಲ್ಲಡಿ
ಯಿಡುತ ಹಜ್ಜೆಯ ನೆಣದ ಕೆಸರಿಗೆ ಛತ್ರಚಮರಿಗಳ
ಅಡಸಿ ಹೆಜ್ಜೆಯನಿಡುತ ರಕುತದ
ಮಡುವನೆಡಬಲಕಿಕ್ಕಿ ಮೆಲ್ಲನೆ
ನಡೆದು ದೈವವ ಬಯ್ದು ಬಯ್ದಡಿಗಡಿಗೆ ಸುಯ್ವುವನ ೧೪

ಭೂತರವ ಭೇತಾಳ ಕಲಹ ವಿ
ಧೂತ ಜಂಬುಕ ಘೂಕ ಕಾಕ
ವ್ರಾತ ರಭಸಕೆ ಬೆಚ್ಚುವನು ಪಾಂಡವರ ಬಲವೆಂದು
ಆತು ಮರಳಿದು ಹಿಂದ ನೋಡಿ ಪ
ರೇತ ವಿಭವವಲಾ ಎನುತ ಛಲ
ಚೇತನನು ಸಲೆ ಚಂಡಿಯಾದನು ಕಳನ ಚೌಕದಲಿ ೧೫

ಹೇಳುವಡೆ ಕುರುಪತಿಯನೇ ನೆರೆ
ಹೋಲುವನು ಗದೆ ಹೆಗಲಲದೆ ಮೇ
ಲಾಳ ಕಾಣೆನು ಚಮರ ಚಾಹಿಯ ಗಜಹಯಾವಳಿಯ
ಹೋಲುವುದು ಜನವೊಬ್ಬರೊಬ್ಬರ
ನಾಳೊಳೊಬ್ಬನೊ ಮೇಣು ಕುರು ಭೂ
ಪಾಲಕನೊ ನೋಡುವೆನೆನುತ ಸಂಜಯನು ನಡೆತಂದ ೧೬

ಬಂದು ಕಂಡನು ರಾಜವನ ಮಾ
ಕಂದನನು ಧೃತರಾಷ್ಟ್ರ ರಾಯನ
ಕಂದನನು ದೌರ್ಜನ್ಯವಲ್ಲೀ ವಿಪುಳಕಂದನನು
ಮುಂದುವರಿವ ವಿಲೋಚನಾಂಬುಗ
ಳಿಂದ ಸೈರಣೆ ಮಿಗದೆ ಸಂಜಯ
ನಂದು ದೊಪ್ಪನೆ ಕೆಡೆದು ಹೊರಳಿದನರಸನಂಘ್ರಿಯಲಿ ೧೭

ಕಡಲತಡಿ ಪರಿಯಂತ ರಾಯರ
ಗಡಣದಲಿ ನೀನೊಬ್ಬನೆಂಬೀ
ನುಡಿಗೆ ನಿಶ್ಚಯವೀಗಲಾಯಿತು ತಂದೆ ಕುರುರಾಯ
ಬಿಡದೆ ಬಾಗುವ ನೃಪರ ಮಕುಟದೊ
ಳಿಡುವ ಕೋಮಲ ಚರಣವಿದರೊಳು
ನಡೆಯಲೆಂತೈ ಕಲಿತೆ ಎಂದನು ಸಂಜಯನು ನೃಪನ ೧೮

ರಣಮುಖದೊಳೇಕಾದಶಾಕ್ಷೋ
ಹಿಣಿಗೆ ಹರಿವಾಯ್ತೇ ಯುಧಿಷ್ಠಿರ
ನುಣಲಿ ಧರೆಯನು ಗೋತ್ರವಧವಿನ್ಯಸ್ತ ಕಿಲ್ಬಿಷವ
ಸೆಣಸ ಮಾಡಿದೆ ದೈವದಲಿ ಧಾ
ರುಣಿಯ ಹಂದುವಿನ ಸಿರಿಗೆ ಸೇರದೆ
ಹಣಿದವಾಡಿದೆ ರಾಜವಂಶದ ಕಲ್ಪತರುವನವ ೧೯

ಶಶಿರುಚಿಗೆ ಸೈರಿಸದ ಸಿರಿಮುಡಿ
ಬಿಸಿಲ ಸೆಕೆಗಾಂತುದೆ ಸುಗಂಧ
ಪ್ರಸರಪೂರ್ಣಘ್ರಾಣವೀ ಹಳೆವೆಣನ ಹೊಲಸಿನಲಿ
ಉಸುರುದೆಗಹಾದುದೆ ಸುಗೀತದ
ರಸದ ಮಧುವಿಂಗಾಂತ ಕಿವಿ ವಾ
ಯಸ ಸೃಗಾಲಧ್ವನಿಗೆ ಸೊಗಸಿತೆ ತಂದೆ ಕುರುರಾಯ ೨೦

ಲಲಿತ ಮೃದುತರ ಹಂಸತೂಳದ
ಲುಳಿತ ಕೋಮಲ ಕಾಯ ಕೈದುಗ
ಳೆಲುಗಳೊಟ್ಟಿಲ ಹಾಸಿನಲಿ ಪೈಸರಿಸಿ ಮಲಗಿತಲಾ
ಸುಳಿಯೆ ಕೈಗೊಡುವರಸುಗಳ ಕೆಲ
ಬಲದ ಪಾಯವಧಾರಿನವರನು
ಕಳುಹಿ ಬಂದೈ ಸಾರ್ವಭೌಮರ ಚಿಹ್ನವಿದೆಯೆಂದ ೨೧

ಎತ್ತಣೇಕಾದಶ ಚಮೂಪತಿ
ಯೆತ್ತಣೇಯೇಕಾಕಿತನ ತಾ
ನೆತ್ತ ಗಜಹಯ ರಥ ಸುಖಾಸನದತಿಶಯದ ಸುಳಿವು
ಎತ್ತಣೇ ಕೊಳುಗುಳದ ಕಾಲ್ನಡೆ
ಯೆತ್ತಣಾಹವದಭಿಮುಖತೆ ಬಳಿ
ಕೆತ್ತಣಪಜಯವಿಧಿಯ ಘಟನೆ ನೃಪಾಲ ನಿನಗೆಂದ ೨೨

ಮುಳಿದಡಗ್ಗದ ಪರಶುರಾಮನ
ಗೆಲಿದನೊಬ್ಬನೆ ಭೀಷ್ಮ ಪಾಂಡವ
ಬಲದ ಸಕಲ ಮಹಾರಥರ ಸಂಹರಿಸಿದರು ದ್ರೋಣ
ದಳಪತಿಯ ಮಾಡಿದಡೆ ಪಾರ್ಥನ
ತಲೆಗೆ ತಂದನು ಕರ್ಣನೀಯು
ಗ್ಗಳೆಯರಗ್ಗಿತು ಕಡೆಯಲೊಬ್ಬನೆ ಕೆಟ್ಟೆ ನೀನೆಂದ ೨೩

ಅವರು ಬದುಕಿದರೈವರೂ ನಿ
ನ್ನವರೊಳಗೆ ನೀನುಳಿಯೆ ನೂರ್ವರು
ಸವರಿತವರೈವರು ಕುಮಾರರು ಸೌಖ್ಯ ಜೀವಿಗಳು
ಜವನ ಸಿವಡಿಗೆ ಹತ್ತಿದರು ನಿ
ನ್ನವರು ಮಕ್ಕಳು ನೂರು ದೈವವ
ನವಗಡಿಸಿ ದುಃಸ್ಥಿತಿಗೆ ಬಂದ್ಯೆ ತಂದೆ ಕುರುರಾಯ ೨೪

ಗೆಲಿದನರಸನು ಹಸ್ತಿನಾಪುರ
ದೊಳಗೆ ಕಟ್ಟಿಸು ಗುಡಿಯನೆಂಬೆನೊ
ತಲೆಬಳಿಚಿ ತಾನೋಡಿ ಬದುಕಿದನೆಂಬೆನೋ ಮೇಣು
ಲಲನೆಯರಿಗೇನೊಸಗೆ ಕುರುಡನ
ನಳಿಸುವೆನೊ ನಗಿಸುವೆನೊ ತಾಯಿಗೆ
ಕಲಿಸು ಬುದ್ಧಿಯನೇನನೆಂಬೆನು ಭೂಪ ಕೇಳೆಂದ ೨೫

ಏನು ಸಂಜಯ ಕೌರವೇಶ್ವರ
ನೇನ ಮಾಡಿದನಲ್ಲಿ ಕೊಂತೀ
ಸೂನುಗಳೊಳಾರಳಿದರುಳಿದರು ನಮ್ಮ ಥಟ್ಟಿನಲಿ
ಏನು ಹದನೈ ಶಕುನಿ ರಣದೊಳ
ಗೇನ ಮಾಡಿದನೆಂದು ಬೆಸಗೊಳ
ಲೇನನೆಂಬೆನು ತಾಯಿ ಗಾಂಧಾರಿಗೆ ರಣೋತ್ಸವವ ೨೬

ಹಿಂದೆ ರಾಯನ ಪಟ್ಟದರಸಿಯ
ತಂದು ಭಾರಿಯ ಭಂಗಬಡಿಸಿದೆ
ಬಂದು ಹರಿಯೈದೂರ ಬೇಡಿದವರವರ ಚಿತ್ತದಲಿ
ಕಂದ ಬಿತ್ತಿದೆ ಕದನದಲಿ ನೀ
ನೊಂದು ನೆಳಲುಳಿಯಲು ಸಹೋದರ
ವೃಂದ ತನುಜ ಜ್ಞಾತಿ ಬಾಂಧವರಳಿದರದರಿಂದ ೨೭

ಕೇಳು ಸಂಜಯ ಪೂರ್ವ ಸುಕೃತದ
ಶಾಳಿವನವೊಣಗಿದೊಡೆ ಭಾರಿಯ
ತೋಳುಗುತ್ತಿನ ಜಯಲಕುಮಿ ಜಂಗಳವ ಜಾರಿದಡೆ
ಭಾಳಲಿಪಿಗಳ ಲೆಕ್ಕವನು ಪ್ರತಿ
ಕೂಲವಿಧಿ ಪಲ್ಲಟಿಸಿ ಬರೆದಡೆ
ಹೇಳಿ ಫಲವೇನೆನುತ ತುಂಬಿದನರಸ ಕಂಬನಿಯ ೨೮

ಕದಡಿತಂತಃಕರಣ ವಿಕ್ರಮ
ದುದಧಿ ನೆಲೆಯಾಯಿತು ನಿರರ್ಥಕೆ
ಒದರಿದಡೆ ಫಲವೇನು ಸಂಜಯ ಹಿಂದನೆಣಿಸದಿರು
ಕದನದಲಿ ದುಶ್ಶಾಸನನ ತೇ
ಗಿದನಲಾ ಬಕವೈರಿ ತಮ್ಮನ
ಸುದರದಲಿ ತೆಗೆವೆನು ವಿಚಿತ್ರವ ನೋಡು ನೀನೆಂದ ೨೯

ನರನ ಬಸುರಲಿ ಕರ್ಣನನು ಭೂ
ವರನ ಸೀಳಿದು ಶಲ್ಯನನು ಕಾ
ತರಿಸದಿರು ಶಕುನಿಯನುಲೂಕನ ಯಮಳರಿಬ್ಬರಲಿ
ಹರಿಬಕಿದಿರಾಗಲಿ ಮುರಾಂತಕ
ಹರಹಿಕೊಳಲಿ ಮದೀಯಬಾಹು
ಸ್ಫುರಣಶಕ್ತಿಗೆ ಭಂಗಬಾರದು ನೋಡು ನೀನೆಂದ ೩೦

ಕಾನನಕೆ ಕೈಯಿಕ್ಕುವರೆ ಪವ
ಮಾನನನು ಪಾವಕನು ಬಯಸುವ
ಭಾನು ಭಾರಿಯ ತಮವ ತಿವಿವನದಾರ ನೆರವಿಯಲಿ
ಈ ನಿಭೃತ ಗದೆಯಿರಲು ಕುಂತೀ
ಸೂನುಗಳ ಕೈಕೊಂಬೆನೇ ಮನ
ಹೀನನೈ ನೀನಕಟ ಸಂಜಯ ಎಂದನಾ ಭೂಪ ೩೧

ಆಳು ಬಿದ್ದುದು ಬೇಹ ನಾಯಕ
ರೋಲಗಿಸಿತಮರಿಯರನೀ ರಣ
ದೂಳಿಗಕೆ ನಾನೊಬ್ಬನೆಂದೇ ನಿನಗೆ ತೋರಿತಲಾ
ಆಳ ಹಂಗನು ನಾಯಕರ ಬಿಲು
ಗೋಲ ಜೋಡಿನ ಬಲವ ಚಿತ್ತದೊ
ಳಾಳಿದೊಡೆ ಧೃತರಾಷ್ಟ್ರರಾಯನ ಕಂದನಲ್ಲೆಂದ ೩೨

ಖ್ಯಾತಿ ಕಂದದು ಮನದ ಧೈರ್ಯದ
ಧಾತು ಕುಂದದು ಲಜ್ಜೆಯಭಿಮತ
ಜಾತಿಗೆಡದು ವಿರೋಧ ಬಿಡದು ಯುಧಿಷ್ಠಿರಾದ್ಯರಲಿ
ಏತಕಿದು ನಿನ್ನೀ ಪ್ರಳಾಪ ವಿ
ಧೂತರಿಪು ಕುರುರಾಯನೆಂಬೀ
ಖ್ಯಾತಿಯಲ್ಲದೆ ಬೇರೆ ರಾಜ್ಯವನೊಲ್ಲೆ ನಾನೆಂದ ೩೩

ಜೀಯ ನಿಮ್ಮಡಿಗಳಿಗೆ ಗುರು ಗಾಂ
ಗೇಯ ವಿದುರಾದಿಗಳು ಹೇಳಿದ
ಜೋಯಿಸವ ಕೈಕೊಂಡಿರೇ ನಮ್ಮೀ ಪ್ರಳಾಪದಲಿ
ರಾಯ ಫಲವೇನೈ ಯುಧಿಷ್ಠಿರ
ರಾಯನೊಲಿದಂತಿರಲಿ ನಿಮ್ಮಯ
ತಾಯಿತಂದೆಗೆ ಹೇಳ್ವೆನೇನನು ಬುದ್ಧಿಗಲಿಸೆಂದ ೩೪

ಇದೆ ಸರೋವರವೊಂದು ಹರಿದೂ
ರದಲಿ ಭುವನಖ್ಯಾತ ತನ್ಮ
ಧ್ಯದಲಿ ಮುಳುಗಿಹೆನೊಂದುದಿನ ಪರಿಯಂತ ಸಲಿಲದಲಿ
ಕದನದಲಿ ಕೌಂತೇಯರನು ಯಮ
ಸದನದಲಿ ತೋರುವೆನು ತಾನೆಂ
ಬುದು ರಹಸ್ಯವು ಜನನಿ ಜನಕಂಗರುಹು ನೀನೆಂದ ೩೫

ತೆಗೆಸು ಪಾಳೆಯವೆಲ್ಲವನು ಗಜ
ನಗರಿಗೈದಿಸು ರಾಣಿಯರ ದಂ
ಡಿಗೆಯ ಕಳುಹಿಸು ಸೂತಸುತ ದುಶ್ಶಾಸನಾದಿಗಳ
ಹಗೆಯ ವಿಜಯವ ಹರಹದಿರು ನಂ
ಬುಗೆಯ ನುಡಿಯಲಿ ಭಾನುಮತಿಯರ
ಬಗೆಯ ಸಂತೈಸೆಂದು ಬೋಳೈಸಿದನು ಸಂಜಯನ ೩೬

ಎನುತ ಸಂಜಯಸಹಿತ ಕೌರವ
ಜನಪ ಬಂದನು ತತ್ಸರೋವರ
ಕನಿಲನಿದಿರಾದನು ಸುಗಂಧದ ಶೈತ್ಯಪೂರದಲಿ
ತನುವಿಗಾಪ್ಯಾಯನದಿನಂತ
ರ್ಮನಕೆ ಪಲ್ಲಟವಾಯ್ತು ಭೀಮನ
ಜನಕನರಿದನು ತನ್ನ ಗುಪ್ತಸ್ಥಾನ ಸಂಗತಿಯ ೩೭

ಉಲಿವ ಕೋಕಿಲ ಪಾಠಕರ ಮೊರೆ
ವಳಿಕುಳದ ಗಾಯಕರ ಹಂಸಾ
ವಳಿಯ ಸುಭಟರ ಜಡಿವ ಕೊಳರ್ವಕ್ಕಿಗಳ ಪಡಿಯರರ
ಅಲರ್ದ ಹೊಂದಾವರೆಯ ನವಪರಿ
ಮಳದ ಸಿಂಹಾಸನದಿ ಲಕ್ಷ್ಮೀ
ಲಲನೆಯೋಲಗಶಾಲೆಯಂತಿರೆ ಮೆರೆದುದಾ ಸರಸಿ ೩೮

ಬಂದು ತಡಿಯಲಿ ಸಂಜಯನ ಕರೆ
ದೆಂದನೀ ಸರಸಿಯಲಿ ತಾನಿಹೆ
ನಿಂದಿನೀ ದಿವಸವನು ಕಳೆವೆನು ಕೊಳನ ಮಧ್ಯದಲಿ
ಮುಂದೆ ಪಾಂಡವರೈವರನು ಗೆಲಿ
ದಂದು ಹೊಗುವೆನು ಗಜಪುರವನಿಂ
ತೆಂದು ಜನನಿಗೆ ಜನಕವಿದುರರಿಗರುಹು ನೀನೆಂದ ೩೯

ಚಾರು ಚಂದ್ರೋಪಲದ ರಮ್ಯಾ
ಗಾರದಲಿ ಮಣಿಮಯದ ಬಹುವಿ
ಸ್ತಾರ ಭದ್ರೋಪರಿಯ ಭವನದ ಚಿತ್ರಶಾಲೆಯಲಿ
ಸಾರಮಣಿ ಪರಿಯಂಕ ಪರಿಸಂ
ಸ್ಕಾರದಲಿ ಮಲಗುವ ಮಹೀಪತಿ
ನೀರೊಳೊರಗುವನೆಂದು ಸಂಜಯನೊರಲಿದನು ಹೊರಳಿ ೪೦

ಒರಲದಿರು ಸಂಜಯ ವಿರೋಧಿಗ
ಳರಿವರಾನಿದ್ದೆಡೆಯನಿಲ್ಲಿಯೆ
ಮರೆದು ಕಳೆ ಪಾಳೆಯವ ತೆಗಸಬುಜಾಕ್ಷಿಯರ ಕಳುಹು
ತೆರಹುಗೊಡು ನೀ ಹೋಗೆನುತ ಮುಂ
ಜೆರಗನಳವಡೆ ಸೆಕ್ಕಿ ಪೂರ್ವದ
ಲರಿದ ಸಲಿಲಸ್ತಂಭವಿದ್ಯೆಯನರಸ ಚಿಂತಿಸಿದ ೪೧

ಚರಣವದನಕ್ಷಾಲನಾಂತಃ
ಕರಣಶುದ್ಧಿಯಲಾಚಮನವಿ
ಸ್ತರಣದಲಿ ಸತ್ಪ್ರಣವವಂಗನ್ಯಾಸವಿಧಿಗಳಲಿ
ವರುಣ ಮಂತ್ರಾಕ್ಷರದ ಜಪಪರಿ
ಕರಣದಲಿ ನಿರ್ಣಿಕ್ತ ಚೇತಃ
ಸ್ಫುರಣ ಸಲಿಲಸ್ತಂಭನವನವನೀಶ ಮಂತ್ರಿಸಿದ ೪೨

ದ್ಯುಮಣಿ ಮೊದಲಾದಖಿಳ ಸುರರಿಗೆ
ನಮಿಸಿ ವರುಣಧ್ಯಾನವನು ಹೃ
ತ್ಕಮಲದಲಿ ನೆಲೆಗೊಳಿಸಿ ನಾಲುಕು ದೆಸೆಯನಾರೈದು
ಕುಮತಿಯಿಳಿದನು ಜಾನು ಕಟಿ ಹೃ
ತ್ಕಮಲಗಳ ಮುಖ ಮೂರ್ಧ ಪರಿಯಂ
ತಮರಿದುದು ಜಲ ಕೊಳನ ಮಧ್ಯದಲರಸ ಪವಡಿಸಿದ ೪೩

ಕುರುಪತಿಯ ಬೀಳ್ಕೊಂಡು ಸಂಜಯ
ಮರಳಿದನು ತನಗಾದ ಹಿಂದಣ
ಪರಿಭವವ ನೆನೆದಡಿಗಡಿಗೆ ಕಂಪಿಸುತ ಮನದೊಳಗೆ
ಧುರದ ಮಧ್ಯದೊಳೊಬ್ಬನೇ ನಡೆ
ತರುವ ಭೂತಾವಳಿಯನೀಕ್ಷಿಸಿ
ಗುರುವ ನೆನೆದನು ಕೇಳು ಜನಮೇಜಯ ಮಹೀಪಾಲ ೪೪

ಬರುತ ಸಂಜಯ ದೂರದಲಿ ಕೃಪ
ಗುರುಸುತರ ಕೃತವರ್ಮಕನ ಕಂ
ಡರಿರಥಿಗಳಿವರಲ್ಲಲೇ ಶಿವಶಿವ ಮಹಾದೇವ
ಭರತಕುಲ ಮೊದಲೊಂದು ಬಳಿಕಾ
ಯ್ತೆರಡುಕವಲೊಬ್ಬರಿಗೆ ಜಯವಿ
ಸ್ತರಣ ಗದುಗಿನ ವೀರನಾರಾಯಣನ ಕರುಣದಲಿ ೪೫

ನಾಲ್ಕನೆಯ ಸಂಧಿ

ಸೂ. ರಾಯಧರ್ಮಜ ಯಮಳ ಫಲುಗುಣ
ವಾಯುಸುತರರಸಿದರು ಕೌರವ
ರಾಯನನು ಕಳನೊಳಗೆ ಕಾಣದೆ ಮುತ್ತಿದರು ಕೊಳನ

ಕೇಳು ಜನಮೇಜಯ ಧರಿತ್ರೀ
ಪಾಲ ಸಂಜಯ ಬರುತ ಕುರುಭೂ
ಪಾಲನರಕೆಯ ಭೀಮನವರಿವರಲ್ಲಲೇ ಎನುತ
ಮೇಲೆ ಹತ್ತಿರ ಬರಬರಲು ಸಮ
ಪಾಳಿಯಲಿ ರಥ ಮೂರರಲಿ ಕೃಪ
ಕೋಲ ಗುರುವಿನ ಮಗನಲಾ ಎನುತಲ್ಲಿಗೈತಂದ ೧

ಇಳಿದು ರಥವನು ಸಂಜಯನ ಬರ
ಸೆಳೆದು ತಕ್ಕೈಸಿದರು ಹಗೆಯಲಿ
ಸಿಲುಕಿ ಬಂದೈ ಭಾಗ್ಯದಲಿ ಧೃತರಾಷ್ಟ್ರಭೂಪತಿಯ
ಕಲಹಗತಿಯೇನಾಯ್ತು ಶಕುನಿಯ
ದಳದೊಳಿದ್ದನು ಕೌರವೇಶ್ವರ
ನುಳಿದನೇ ಹದನಾವುದೆಂದರು ಭಟರು ಸಂಜಯನ ೨

ಅರಿದುದಿಲ್ಲಾ ಕೌರವೇಂದ್ರನ
ನರಸಿ ಶಕುನಿಯ ದಳವ ಮುತ್ತಿದ
ರಿರಿದರವರ ತ್ರಿಗರ್ತರನು ಸೌಬಲ ಸುಶರ್ಮಕರ
ಮುರಿದ ಬವರವ ಬಲಿದು ಗಜ ನೂ
ರರಲಿ ಹೊಕ್ಕನು ರಾಯನಹಿತರ
ಜರಿದು ಝಾಡಿಸಿ ಬೀದಿವರಿದನು ರಾಯದಳದೊಳಗೆ ೩

ಬಳಿಕ ಭೀಮನ ಗದೆಯಲಿಭ ಶತ
ವಳಿದರೊಬ್ಬನೆ ತಿರುಗಿ ಹಾಯ್ದನು
ಕೊಳುಗುಳದ ಕೋಳ್ಗುದಿಯ ಕೋಲಾಹಲದ ಕೆಸರಿನಲಿ
ತಲೆಗೆ ಬಂದುದು ತನಗೆಯಾಕ್ಷಣ
ಸುಳಿದರೆಮ್ಮಾರಾಧ್ಯ ವರ ಮುನಿ
ತಿಲಕ ವೇದವ್ಯಾಸದೇವರು ಕೃಪೆಯ ಭಾರದಲಿ ೪

ಸೆಳೆದುಕೊಂಡನು ಮೃತ್ಯುವಿನ ಹೆಡ
ತಲೆಯನೊದೆದು ಕೃಪಾಳು ತನ್ನನು
ತಲೆಬಳಿಚಿ ಕಳುಹಿದರೆ ಬಂದೆನು ರಾಯನರಕೆಯಲಿ
ಬಳಲಿ ಬೀಳುತ್ತೇಳುತೊಬ್ಬನೆ
ತಲೆಮುಸುಕಿನಲಿ ನಡೆಯೆ ಕಂಡೆನು
ನೆಲನೊಡೆಯನಹುದಲ್ಲೆನುತ ಸುಳಿದೆನು ಸಮೀಪದಲಿ ೫

ಕಂಡೆನರಸನ ನಿಬ್ಬರವ ಬಳಿ
ಕಂಡಲೆದಂದತಿಶೋಕಶಿಖಿ ಕೈ
ಗೊಂಡುದಿಲ್ಲರೆಘಳಿಗೆ ಬಳಿಕೆಚ್ಚತ್ತು ಕಂದೆರೆದು
ಖಂಡಿಸಿದನೆನ್ನುಬ್ಬೆಯನು ಹರಿ
ಗೊಂಡುದಾತನ ಸತ್ವವಾತನ
ದಂಡಿಯಲಿ ಬಹರಾರು ಸುರ ನರ ನಾಗಲೋಕದಲಿ ೬

ಬಂದನೆನ್ನನು ಸಂತವಿಡುತಲ
ದೊಂದು ಸರಸಿಯ ತಡಿಯಲಳವಡೆ
ನಿಂದು ಸಂವರಿಸಿದನು ಗದೆಯನು ಬಾಹುಮೂಲದಲಿ
ತಂದೆಗರುಹೆಂದೆನಗೆ ಹೇಳಿದು
ಹಿಂದೆ ಮುಂದೆಡಬಲನನಾರೈ
ದಂದವಳಿಯದೆ ನೀರ ಹೊಕ್ಕನು ಕಾಣೆನವನಿಪನ ೭

ಅವರು ಕಂಬನಿದುಂಬಿದರು ಕೌ
ರವ ಮಹಾವಂಶಾಭಿಚಾರ
ವ್ಯವಸಿತಕೆ ಫಲವಾಯ್ತಲಾ ಯಮನಂದನಾದಿಗಳ
ಶಿವಶಿವಾ ಪವಡಿಸಿತೆ ಚತುರ
ರ್ಣವ ವಿಪರಿಪರಿಧಾನ ಪೃಥ್ವೀ
ಧವನ ಬಾಳಿಕೆ ನೀರೊಳೆಂದಳಲಿದನು ಗುರುಸೂನು ೮

ಅಳಲದಿರಿ ಗಜಪುರಿಗೆ ಸತಿಯರ
ಕಳುಹುವೆನು ನೀವವನಿಪಾಲನ
ತಿಳುಹಲಾಪಡೆ ಸಂಧಿಗೊಡಬಡಿಸುವದು ಕುರುಪತಿಯ
ಕೊಳನ ತಡಿಯಲಿ ಕಾಣದಂತಿರೆ
ಬಳಸಿ ನೀವೆಂದವರನತ್ತಲು
ಕಳುಹಿ ಸಂಜಯ ಬಂದು ಹೊಕ್ಕನು ನೃಪನ ಪಾಳೆಯವ ೯

ಅರಮನೆಗೆ ಬಂದಖಿಳ ಸಚಿವರ
ಕರಸಿದನು ಸರಹಸ್ಯವನು ವಿ
ಸ್ತರಿಸಿದನು ಸರ್ವಾಪಹಾರವ ನೃಪಪಲಾಯನವ
ಅರಸಿಯರಿದಳು ಭಾನುಮತಿ ವಿಂ
ಕ್ಕರಸಿಯರಿಗರುಹಿಸಿದಳಂತಃ
ಪುರದೊಳಲ್ಲಿಂದಲ್ಲಿ ಹರೆದುದು ಕೂಡೆ ರಣಭೀತಿ ೧೦

ಕೂಡೆ ಗಜಬಜವಾಯ್ತು ಪಾಳೆಯ
ವೋಡಿತಲ್ಲಿಯದಲ್ಲಿ ಜನವ
ಲ್ಲಾಡಿದುದು ಕ್ರಯವಿಕ್ರಯದ ವಾಣಿಜ್ಯವೀಥಿಯಲಿ
ಹೂಡಿದವು ಬಂಡಿಗಳು ಹರಿದೆಡೆ
ಯಾಡಿದವು ಕೊಲ್ಲಾರಿಗಳು ರಥ
ಗೂಡಿದವು ಬದ್ಧರದ ದಂಡಿಗೆ ಬಂದವರಮನೆಗೆ ೧೧

ಭಾನುಮತಿ ಹೊರವಂಟಳರಸನ
ಮಾನಿನಿಯರು ಸಹಸ್ರಸಂಖ್ಯೆಯೊ
ಳಾನನೇಂದುಪ್ರಭೆ ವಿಭಾಡಿಸೆ ಬಿಸಿಲ ಬೇಗೆಗಳ
ಭಾನುದತ್ತನ ಸೈಂಧವನ ರವಿ
ಸೂನುವಿನ ದುಶ್ಯಾಸನನ ಜಲ
ಜಾನನೆಯರೊಗ್ಗಿನಲಿ ರಥವೇರಿದರು ದುಗುಡದಲಿ ೧೨

ಸರಕ ಹಿಡಿದವು ಬಂಡಿ ಶತಸಾ
ವಿರ ನೃಪಾಲಯದಿಂದ ವಿವಿಧಾ
ಭರಣಭರಿತದ ಭೂರಿ ಪೆಟ್ಟಿಗೆ ಥಾಡಿಸಿತು ರಥವ
ವರ ದುಕೂಲದ ಪಟ್ಟಕರ್ಮದ
ಥರದದಿಂದೊತ್ತಿದವು ಚಾಮೀ
ಕರಮಯದ ಬಹುವಿಧದ ಭಾಂಡದ ಬಂಡಿ ನೂಕಿದವು ೧೩

ಬಳಿಯ ಚೌರಿಯ ಹೊರೆಯ ಚಿತ್ರಾ
ವಳಿ ವಿಧಾನದ ಹಾಸುಗಳ ಹೊಂ
ಬಳಿಯ ತೆರೆಸೀರೆಗಳ ಛತ್ರ ವ್ಯಜನ ಸೀಗುರಿಯ
ಹೊಳೆವ ಪಟ್ಟೆಯಲೋಡಿಗೆಯ ಹೊಂ
ಗೆಲಸದೊಳುರುಝಗೆಗಳ ಸುವರ್ಣಾ
ವಳಿಯ ದಿಂಡುಗಳೊಟ್ಟಿದವು ಬಂಡಿಗಳ ಜವ ಜಡಿಯೆ ೧೪

ಕರವತಿಗೆ ಹೊಂಗಳಸ ಹೊಂಗೊ
ಪ್ಪರಿಗೆ ದೀಪಸಂಭ ಹೇಮದ
ಸರಪಣಿಯ ಮಣಿಮಯದ ಜಂತ್ರದ ಜೀವಪುತ್ರಿಗಳ
ಮರಕತದ ಮಧುಪಾತ್ರೆ ನೀಲದ
ಕರಗ ವೈಡೂರಿಯದ ಪಡಿಗವ
ಚರರು ತಂದೊಟ್ಟಿದರು ಬಂಡಿಗೆ ಭಾರಸಂಖ್ಯೆಯಲಿ ೧೫

ಮೆರೆವ ಗಜ ಹಯಶಾಲೆಯಲಿ ವೈ
ಮುರಿಕ ವೃದ್ಧ ವ್ಯಾಧಿತಾವಳಿ
ಮರಿಗುದುರೆ ಮರಿಯಾನೆ ತೆಗೆದವು ಲಕ್ಕ ಸಂಖ್ಯೆಯಲಿ
ಉರುವ ಭಂಡಾರದ ಮಹಾರ್ಘದ
ನೆರವಣಿಗೆ ಗಾಢಿಸಿತು ಬೀದಿಯ
ತೆರಹು ಕೆತ್ತವು ಹೊತ್ತ ಸರಕಿನ ಬಹಳ ಬಂಡಿಗಳ ೧೬

ರಾಯನರಮನೆ ಮಂಡವಿಗೆ ಗುಡಿ
ಲಾಯ ಚವುಕಿಗೆ ನಿಖಿಳ ಭವನ ನಿ
ಕಾಯವನು ತೆಗೆದೊಟ್ಟಿದರು ಬಂಡಿಗಳ ಹಂತಿಯಲಿ
ರಾಯನನುಜರ ದ್ರೋಣ ಕೃಪ ರಾ
ಧೇಯ ಸೈಂಧವ ಶಕುನಿ ರಾಜಪ
ಸಾಯಿತರ ಗುಡಿಗೂಢಚಂಪಯವೇರಿದವು ರಥವ ೧೭

ಪಾಳೆಯಕೆ ಗಜಪುರದ ವಂಕಕೆ
ಕೀಲಿಸಿತು ದಂಡಿಗೆಯು ಸಂದಣಿ
ಮೇಲುಸರಕಿನ ಬಂಡಿ ತಲೆವೊರೆಯೆತ್ತು ಕಂಬಿಗಳ
ಹೇಳಲೇನು ಸಮುದ್ರ ವಿಭವವ
ನೇಳಿಸುವ ಪಾಳೆಯದ ಸಿರಿ ಶೂ
ನ್ಯಾಲಯಕೆ ಜೋಡಿಸಿತಲೈ ಜನಮೇಜಯ ಕ್ಷಿತಿಪ ೧೮

ತುಂಬಿತಿದು ಗಜಪುರವನಲ್ಲಿಯು
ಕಂಬನಿಯ ಕಾಲುವೆಯನದನೇ
ನೆಂಬೆನೈ ಗಜಬಜಿಕೆ ಮೊಳೆತುದು ಕೇರಿಕೇರಿಯಲಿ
ಲಂಬಿಸಿತು ಭಯತಿಮಿರ ಶೋಕಾ
ಡಂಬರದ ಡಾವರ ವಿವೇಕವ
ರ್ಝೊಂಬಿಸಿತು ಧೃತರಾಷ್ಟ್ರ ವಿದುರರ ಪೌರ ಪರಿಜನದ ೧೯

ಬಂದು ಸಂಜಯನಂಧನೃಪತಿಯ
ಮಂದಿರವ ಹೊಕ್ಕಖಿಳ ನಾರೀ
ವೃಂದವನು ಕಳುಹಿದನು ದಂಡಿಗೆಗಳಲಿ ಮನೆಮನೆಗೆ
ಬಂದರಾರೆನೆ ಸಂಜಯನು ಜೀ
ಯೆಂದಡುತ್ಸಾಹದಲಿ ಬಂದೈ
ತಂದೆ ಸಂಜಯ ಬಾಯೆನುತ ತಡವಿದನು ಬೋಳೈಸಿ ೨೦

ಹೋಗಿ ತಳುವಿದೆ ಕೌರವೇಂದ್ರನ
ನೀಗಿದಳೆ ಜಯಲಕ್ಷ್ಮಿ ಪಾಂಡವ
ರಾಗುಹೋಗೇನಾಯ್ತು ಶಕುನಿಯ ಹಯದ ಮೋಹರವ
ತಾಗಿ ಮುರಿದನೆ ಭೀಮನೀ ಮೇ
ಲ್ಬೋಗಿನಾಹವವೇನು ರಾಯನ
ತಾಗು ಥಟ್ಟೇನಾಯ್ತು ಸಂಜಯ ತಿಳಿಯಹೇಳೆಂದ ೨೧

ಶಕುನಿ ಬಿದ್ದನು ಜೀಯ ಸಹದೇ
ವಕನ ಕೈಯಲುಲೂಕ ಮಡಿದನು
ನಕುಲನಂಬಿನಲಾ ತ್ರಿಗರ್ತ ಸುಶರ್ಮಕಾದಿಗಳು
ಸಕಲ ಗಜಹಯಸೇನೆ ಸಮಸ
ಪ್ತಕರು ಪಾರ್ಥನ ಶರದಲಮರೀ
ನಿಕರವನು ಸೇರಿದರು ಹೇಳುವುದೇನು ರಣರಸವ ೨೨

ಬಳಿಕ ನೂರಾನೆಯಲಿ ನಿನ್ನವ
ನಳವಿಗೊಟ್ಟನು ಭೀಮಸೇನನ
ಚಲಗತಿಯ ಚಾತುರ ಚಪೇಟ ಪದಪ್ರಹಾರದಲಿ
ಕಳನೊಳಗೆ ಕೋಡೂರಿ ಮಗ್ಗುಲ
ನೆಲಕೆ ಕೀಲಿಸಲಾನೆಯಿಂದಿಳಿ
ಗಿಳಿದು ಹಾಯ್ದನು ಭಯದಿನೇಕಾಂಗದಲಿ ಕುರುರಾಯ ೨೩

ಕುರುಪತಿಯನರಸುತ್ತ ತಾನೈ
ತರಲು ಸಾತ್ಯಕಿ ಕಂಡು ಸೂಠಿಯ
ಲುರವಣಿಸಿ ಹರಿತಂದು ಹಿಡಿದನು ಹೊಯ್ದು ಕೆಲಬಲನ
ಕರೆದು ಧೃಷ್ಟದ್ಯುಮ್ನ ತನ್ನಯ
ಶಿರವನರಿಯನೆ ಬಳಿಕ ಸಾತ್ಯಕಿ
ಕರದ ಖಡುಗವನುಗಿದು ಹೂಡಿದನೆನ್ನ ಗಂಟಲಲಿ ೨೪

ಜಲಧಿಯಲಿ ಫಣಿವದನದಲಿ ರಿಪು
ಬಲದ ಮುಖದಲಿ ಸಿಡಿಲ ಹೊಯ್ಲಲಿ
ಹಳುವದಲಿ ಗಿರಿಶಿಖರದಲಿ ದಾವಾಗ್ನಿ ಮಧ್ಯದಲಿ
ಸಿಲುಕಿದಡೆ ಬಿಡಿಸುವವಲೇ ಪ್ರತಿ
ಫಲಿತ ಪೂರ್ವಾರ್ಜಿತ ಪುಣ್ಯಾ
ವಳಿಗಳೆಂಬುದು ತನ್ನೊಳಾದುದು ಭೂಪ ಕೇಳೆಂದ ೨೫

ಆವ ವಹಿಲದೊಳಾದುದಾವಿ
ರ್ಭಾವವೆಂದಾನರಿಯೆನಾಗಳೆ
ದೇವಮುನಿಯಡ್ಡೈಸಿ ಹಿಡಿದನು ಕೊರಳಡಾಯುಧವ
ಸಾವು ತಪ್ಪಿತು ಬಾದರಾಯಣ
ನೋವಿ ಕೃಪೆಯಲಿ ವ್ಯೆದಡವಿ ಸಂ
ಭಾವಿಸುತ ಕುರುಪತಿಯನರಸೆಂದೆನಗೆ ನೇಮಿಸಿದ ೨೬

ಬೀಳುಕೊಂಡೆನು ಮುನಿಯನವನೀ
ಪಾಲಕನನರಸಿದೆನು ಕಳನೊಳು
ಸಾಲ ಹೆಣನೊಟ್ಟಿಲ ಕಬಂಧದ ರುಧಿರಪೂರದಲಿ
ಬೀಳುತೇಳುತ ನಿಲುತ ಬಳಲಿದು
ಕಾಲುನಡೆಯಲಿ ಸುಳಿವ ಕುರು ಭೂ
ಪಾಲಕನ ಕಂಡೊಡನೆ ಬಂದೆನು ಕೊಳನ ತಡಿಗಾಗಿ ೨೭

ಇಳಿದು ಸರಸಿಯ ಮಧ್ಯದಲಿ ನೃಪ
ತಿಲಕ ನಿಂದನು ಪಾಳೆಯವ ನೀ
ಕಳುಹು ಗಜಪುರಿಗೆನಲು ಬಂದೆನು ಪಥದ ಮಧ್ಯದಲಿ
ಸುಳಿವ ಕಂಡೆನು ಕೃಪನನಾ ಗುರು
ಗಳ ಮಗನ ಕೃತವರ್ಮಕನನುಂ
ದುಳಿದ ಮೂವರ ಕಳುಹಿದೆನು ಕುರುಪತಿಯ ಹೊರೆಗಾಗಿ ೨೮

ತಂದೆನಿಲ್ಲಿಗೆ ಸಕಲ ನಾರೀ
ವೃಂದವನು ಕುರುಪತಿಯ ನೇಮದ
ಲಿಂದಿನೀ ವೃತ್ತಾಂತ ವರ್ತಿಸಿತಿಲ್ಲಿ ಪರಿಯಂತ
ಮುಂದೆ ಹೇಳುವುದೇನು ನೀ ಬೆಸ
ಸೆಂದಡವನೀಪತಿಯ ಹೊರೆಗೈ
ತಂದನೇ ಗುರುಸೂನು ಮೇಲಣ ಹದನ ಹೇಳೆಂದ ೨೯

ಅರಸ ಕೇಳ್ ಕೃಪ ಗುರುಜ ಕೃತವ
ರ್ಮರು ರಥಾಶ್ವಂಗಳನು ದೂರದ
ಲಿರಿಸಿ ತಲೆಮುಸುಕಿನಲಿ ಬಂದರು ಕೊಳನ ತಡಿಗಾಗಿ
ತರುಲತೆಗಳಿರುಬಿನಲಿ ಕಂಜಾ
ಕರದ ತಡಿಯಲಿ ನಿಂದು ಮೆಲ್ಲನೆ
ಕರೆದು ಕೇಳಿಸಿ ಹೇಳಿದರು ತಂತಮ್ಮ ಹೆಸರುಗಳ ೩೦

ಬದುಕಿ ಬಂದಿರೆ ಭೀಮ ನಿಮ್ಮನು
ಗದೆಯ ಸವಿಗಾಣಿಸನಲಾ ಸಾ
ಕಿದನ ಸಮಯಕೆ ಸುಳಿದಿರೈ ಸಾಹಿತ್ಯರೇಖೆಯಲಿ
ಕದನದಲಿ ಸೌಬಲ ಸುಶರ್ಮರ
ಹೊದರ ಹರೆಗಡಿವಲ್ಲಿ ನೀವ್ ಮಾ
ಡಿದ ಪರಾಕ್ರಮವಾವುದೆಂದನು ನೃಪತಿ ಖಾತಿಯಲಿ ೩೧

ಜೀಯ ಖತಿಯೇಕೆಮ್ಮೊಡನೆ ಚ
ಕ್ರಾಯುಧನ ಚಾತುರ್ಯದಲಿ ರಣ
ದಾಯತಪ್ಪಿತು ಭಟರು ಬೀತಂದು ಹೇಳಲೇನದನು
ಕಾಯಿದರೊ ಕಾದಿದರೊ ಗುರು ಗಾಂ
ಗೇಯ ಸೈಂಧವ ಮಾದ್ರಪತಿ ರಾ
ಧೇಯರನುಗತವಾಗದಿಹುದಪರಾಧ ನಮಗೆಂದ ೩೨

ಅರಸ ಹೊರವಡು ಭೀಮಪಾರ್ಥರ
ಕರುಳ ಬೀಯುವ ಭೂತನಿಕರಕೆ
ಬರಿಸುವೆವು ನೀ ನೋಡಲೊಡ್ಡುವೆವಸ್ತ್ರಸಂತತಿಯ
ಗರುವರಿಹರೇ ನೀರೊಳಾ ಹಿಮ
ಕರ ಮಹಾನ್ವಯ ಕೀರ್ತಿ ಜಲದೊಳು
ಕರಗದಿಹುದೇ ಕಷ್ಟವೃತ್ತಿಯದೆಂದರವನಿಪನ ೩೩

ಏಳು ಕುರುಪತಿ ಪಾಂಡುತನಯ
ವ್ಯಾಳಸೇವೆಗೆ ಸಿಂಹವಿದೆ ನಿ
ನ್ನಾಳ ಬಿಡು ನೀ ನೋಡುತಿರು ಕರ್ಣಾದಿ ಸುಭಟರಲಿ
ಜಾಳಿಸಿದ ಜಯಕಾಮಿನಿಯ ಜಂ
ಘಾಳತನವನು ನಿಲಿಸಿ ನಿನ್ನಯ
ತೋಳಿನಲಿ ತೋರುವೆವು ಪೈದೋರೆಂದರವನಿಪನ ೩೪

ಒಪ್ಪದಿದು ಭೀಷ್ಮಾದಿಯವ್ವನ
ದರ್ಪದಲಿ ಜಾರಿದ ಜಯಾಂಗನೆ
ಮುಪ್ಪಿನಲಿ ನಮಗೊಲಿವುದರಿದೇಕಾಕಿಯಾದೆವಲೆ
ತಪ್ಪಿದುದನೀ ಸಲಿಲವಾಸದೊ
ಳೊಪ್ಪವಿಡುವೆನು ನಾಳೆ ನೀವ್ ತೊಲ
ಗಿಪ್ಪುದಿಂದಿನೊಳೆಂದನವನಿಪನಾ ಕೃಪಾದಿಗಳ ೩೫

ಇವೆ ಮಹಾಮಂತ್ರಾಸ್ತ್ರಸಂತತಿ
ಯಿವೆ ಮಹಾಧನುರಾಜ್ಯಸತ್ಕೃತಿ
ಸವನ ಸಾಪೇಕ್ಷಂಗಳಿವೆ ತ್ರೈರಥಿಕರೊಬ್ಬರಲಿ
ಅವನಿಪತಿ ನೀ ಸೇಸೆದಳಿ ವಿ
ಕ್ರಮವರು ಸೇನೆ ವಿರೋಧಿವರ್ಗಕೆ
ದಿವವೊ ಧರೆಯೊ ನೋಡಲಹುದೇಳೆಂದನಾ ದ್ರೌಣಿ ೩೬

ಸೇಸೆದಳಿದೆನು ಭೀಷ್ಮಗಗ್ಗದ
ಭಾಷೆ ನಿಮ್ಮಯ್ಯನಲಿ ಗತವಾ
ಯ್ತೀಸ ಪತಿಕರಿಸಿದೆನು ಕರ್ಣನನಂದು ನೀನರಿಯ
ಓಸರಿಸಿದನೆ ಮಾದ್ರಪತಿ ಬಳಿ
ಕೀಸು ಬಂದುದು ದೈವದೊಲಹಿನ
ಪೈಸರಕೆ ನೀವೇನ ಮಾಡುವಿರೆಂದನಾ ಭೂಪ ೩೭

ರಣದೊಳಾ ಗಾಂಗೇಯಗಿಮ್ಮಡಿ
ಗುಣವ ತೋರುವೆನಪ್ಪನವರಿಂ
ದೆಣಿಸಿಕೊಳು ಮೂವಡಿಯನಗ್ಗದ ಸೂತನಂದನನ
ರಣಕೆ ನಾಲ್ವಡಿ ಮಾದ್ರರಾಜನ
ಹೊಣಕೆಗೈದು ಸಂಶರ್ಮ ಶಕುನಿಗ
ಳೆಣಿಸುವಡೆ ಪಾಡಲ್ಲ ನೋಡೇಳೆಂದನಾ ದ್ರೌಣಿ ೩೮

ಖರೆಯರೈ ನೀವುಭಯ ರಾಯರ
ಗುರುಗಳದು ಕುಂದಿಲ್ಲ ಕೃಪನೇ
ಹಿರಿಯನಾಚಾರಿಯನು ಯಾದವರೊಳಗೆ ಕೃತವರ್ಮ
ಗರುವರೈ ನೀವಿಲ್ಲಿ ರಣಬಾ
ಹಿರರೆ ಸಾಕಂತಿರಲಿ ಸುಕೃತದೊ
ಳರಗೆಲಸಿಗಳು ನಾವೆ ನಿಮ್ಮಲಿ ಕೊರತೆಯಿಲ್ಲೆಂದ ೩೯

ಅರಸ ಕೇಳೈ ಸುಕೃತವನು ವಿ
ಸ್ತರಿಸುವೆನು ಪೂರಾಯವೆನೆ ಕಾ
ಹುರದ ನುಡಿ ಬೇಡೇಳು ನಡೆವುದು ಹಸ್ತಿನಾಪುರಿಗೆ
ಅರಿಗಳೈತಂದೌಕಿದಡೆ ಗಜ
ಪುರದ ದುರ್ಗವ ಬಲಿದು ನಿಲುವುದು
ಪರಮಮಂತ್ರವಿದೆಂದನಶ್ವತ್ಥಾಮನವನಿಪನ ೪೦

ಸಲಿಲ ಮಧ್ಯದೊಳಿಂದಿನಿರುಳನು
ಕಳೆದೆನಾದಡೆ ಪಾಂಡುಪುತ್ರರ
ಗೆಲುವೆನುದಯದೊಳಿದುವೆ ನಿಶ್ಚಯವೆನ್ನ ಚಿತ್ತದಲಿ
ಅಳುಕಿ ಕದನದೊಳೋಡಿ ನಗರಿಯ
ಲಲನೆಯರ ಮರೆಗೊಂಬೆನೇ ನೀವ್
ತೊಲಗಿ ಭೀಮನ ಬೇಹು ಬಹುದಿರಬೇಡ ನೀವೆಂದ ೪೧

ಅರಸ ಕೇಳೈ ದೈವಯೋಗವ
ಪರಿಹರಿಸಲಾರಳವು ಪವನಜ
ನರಮನೆಯ ಮೃಗವೇಂಟೆಕಾರರು ಮಾಂಸಭಾರದಲಿ
ಬರುತ ನೀರಡಿಸಿದರು ಕಂಡರು
ಸರಸಿಯನು ನೀರ್ಗುಡಿಯಲೈತಂ
ದಿರಿಸಿದರು ತೀರದಲಿ ಬಹಳಾಮಿಷದ ಕಂಬಿಗಳ ೪೨

ಚರಣ ವದನವ ತೊಳೆದು ನಿರ್ಮಳ
ತರವರಾಂಬುವನೀಂಟಿದರು ಕೃಪ
ಗುರುಸುತರ ನುಡಿಗಳನು ನಡುನೀರಲಿ ನೃಪಧ್ವನಿಯ
ಅರಿದರಿವರಾಲಿಸಿದರೇನಿದು
ಕುರುಪತಿಯ ತತ್ಸುಭಟವಾದೋ
ತ್ತರವಲಾ ಲೇಸಾಯ್ತೆನುತ ಕೇಳಿದರು ಮರೆವಿಡಿದು ೪೩

ಆಯಿತಿದು ನೃಪರಾಜಕಾರ್ಯದ
ದಾಯಕಿದು ಧುರಪಥವಲಾ ಕುರು
ರಾಯಗುಪ್ತನಿವಾಸವರ್ಥಪ್ರದವಲಾ ನಮಗೆ
ಕಾಯಿದಿರಿ ಕಂಡೌ ಸರೋಜದ
ತಾಯಿ ಸರಸಿಯೆನುತ್ತ ಹೋದರು
ವಾಯುತನುಜನ ಬೇಂಟೆಕಾರರು ನಗುತ ಪಾಳೆಯಕೆ ೪೪

ಅರಸ ಕೇಳ್ ಸಮಸಪ್ತಕರ ಸಂ
ಹರಿಸಿ ಶಕುನಿಯ ಮುರಿದು ಕಳನಲಿ
ದೊರೆಯ ಕಾಣದೆ ಭೀಮಸೇನಾರ್ಜುನರು ದುಗುಡದಲಿ
ಹರಿಸಿದರು ದೂತರನು ಕೌರವ
ಧರಣಿಪನ ಪಾಳೆಯಕೆ ಹಸ್ತಿನ
ಪುರಿಗೆ ಕೂಡೆ ದಿಗಂತದಲಿ ಚರರರಸಿದರು ನೃಪನ ೪೫

ಹರಿದು ದೂತರು ನೃಪನ ಕಾಣದೆ
ಮರಳಿದರು ಯಮಸೂನು ದುಗುಡದ
ಭರದ ಭಾರವಣೆಯಲಿ ಹೊಕ್ಕನು ತನ್ನ ಪಾಳೆಯವ
ಕುರುನೃಪತಿ ತಪ್ಪಿದನು ಭೀಷ್ಮಾ
ದ್ಯರ ವಿಜಯ ವ್ಯಥೆಯಾಯ್ತು ಹಸ್ತಿನ
ಪುರದ ಸಿರಿ ಜಾರಿದಳು ತನಗೆಂದರಸ ಬಿಸುಸುಯ್ದು ೪೬

ಹೆಣನ ಬಗಿದರಸಿದರು ಕರಿಗಳ
ಹಣಿದದಲಿ ನೋಡಿದರು ರಥಸಂ
ದಣಿಗಳೊಟ್ಟಿಲ ಕೆದರಿ ಭೀಷ್ಮನ ಸರಳ ಮಂಚದಲಿ
ಹಣುಗಿದರು ಭಗದತ್ತನಾನೆಯ
ನಣೆದುನೋಡಿದರರುಣವಾರಿಯ
ಕೆಣಕಿ ಕೂಡರಸಿದರು ಚಾರರು ಕಳನ ಚೌಕದಲಿ ೪೭

ಹರಿಹರಿದು ಕೂಡರಸಿ ದೂತರು
ಮರಳಿ ಬಂದರು ದುಗುಡಭರದಲಿ
ಬೆರಳ ಮೂಗಿನಲಿದ್ದುದವನಿಪಸಹಿತ ಪರಿವಾರ
ಇರುಳು ಬೇಗೆಯ ಚಕ್ರವಾಕಕೆ
ತರಣಿ ತಲೆದೋರಿದವೊಲಟವೀ
ಚರರಿಗರಸಗೆ ಭಾವಭಾವ ವ್ಯಕ್ತವಾಯ್ತೆಂದ ೪೮

ತಂದ ಮಾಂಸದ ಕಂಬಿಗಳನು ಪು
ಳಿಂದರೊಪ್ಪಿಸಿ ಭೀಮಸೇನನ
ಮಂದಿರವ ಸಾರಿದರು ಕಂಡರು ಜನದ ಕಳವಳವ
ಇಂದಿನೀ ಸಂಗ್ರಾಮಜಯದಲಿ
ಬಂದ ಜಾಡ್ಯವಿದೇನು ಬಿನ್ನಹ
ವೆಂದು ಸಲುಗೆಯ ಶಬರಪತಿ ನುಡಿಸಿದನು ಪವನಜನ ೪೯

ರಣಮುಖದೊಳೇಕಾದಶಾಕ್ಷೋ
ಹಿಣಿಯ ಗೆಲಿದುದು ವಿಫಲವಾದುದು
ಜುಣುಗಿದರಿನೃಪನಾವ ಜವನಿಕೆ ಮರೆಯೊಳಡಗಿದನೊ
ತೃಣವನದೊಳಿರುಬಿನಲಿ ಮೆಳೆಸಂ
ದಣಿಗಳಲಿ ಮರಗಾಡಿನಲಿ ಮೃಗ
ಗಣದ ನೆಲೆಯಲಿ ಕಾಣಿರಲೆ ನೀವೆಂದನಾ ಭೀಮ ೫೦

ಆದರೆಕ್ಕಟಿ ಬಿನ್ನಹವ ನೀ
ವಾದರಿಪುದೆನೆ ತುಷ್ಟನಾಗಿ ವೃ
ಕೋದರನು ಕರಸಿದನು ಪರಿಮಿತಕಾ ಪುಳಿಂದಕರ
ಆದುದೇ ನೆಲೆ ಕುರುಪತಿಗೆ ದು
ರ್ಭೇದವಿದು ಮೆಚ್ಚುಂಟು ನಿಮಗೆನ
ಲಾ ದುರಾತ್ಮಕರರುಹಿದರು ಧೃತರಾಷ್ಟ್ರ ಕೇಳೆಂದ ೫೧

ಜೀಯ ಕುರುಪತಿ ಗುಪ್ತದಲಿ ದ್ವೈ
ಪಾಯನನ ಸರಸಿಯಲಿ ಸಮರವಿ
ಧಾಯಕದ ವಾರ್ತೆಯನು ತನ್ನವರೊಡನೆ ತೀರದಲಿ
ಬಾಯಿಗೇಳಿಸುತಿರ್ದ ನಾವ್ ತ
ತ್ತೋಯಪಾನಕೆ ತಿರುಗಿ ಕಂಡೆವು
ರಾಯನಂಘ್ರಿಗಳಾಣೆಯೆಂದರು ಶಬರರನಿಲಜಗೆ ೫೨

ಇತ್ತನವದಿರಿಗಂಗಚಿತ್ರವ
ಸುತ್ತವಾಂಬರ ವೀರ ನೂಪುರ
ಮುತ್ತಿನೇಕಾವಳಿಯ ಕರ್ಣಾಭರಣ ಮುದ್ರಿಕೆಯ
ಹೊತ್ತ ಹರುಷದ ಹೊಳೆವ ಕಂಗಳ
ತೆತ್ತಿಸಿದ ಪುಳಕದ ಸಘಾಡಿಕೆ
ವೆತ್ತ ಸುಮ್ಮಾನದಲಿ ಬಂದನು ರಾಯನರಮನೆಗೆ ೫೩

ಗುಡಿಯ ಕಟ್ಟಿಸು ಜೀಯ ಚರರಿಗೆ
ಕೊಡು ಪಸಾಯವನರಿನೃಪನ ತಲೆ
ವಿಡಿದರಾ ದ್ವೈಪಾಯನ ಸರೋವರದ ಮಧ್ಯದಲಿ
ಅಡಗಿದನು ತಡಿವಿಡಿದು ನಿಂದವ
ರೊಡನೆ ಮಾತಾಡಿದನು ಗಡ ನಿ
ಮ್ಮಡಿಯೆ ಬಲ್ಲಿರಿ ರಾಜಕಾರ್ಯವನೆಂದನಾ ಭೀಮ ೫೪

ಕರೆ ಮುಕುಂದನನರ್ಜುನನ ಸಂ
ವರಣೆ ಬರಲಿ ಶಿಖಂಡಿ ಪಾಂಚಾ
ಲರಿಗೆ ನೇಮಿಸು ಕರಸು ಧೃಷ್ಟದ್ಯುಮ್ನ ಸೃಂಜಯರ
ಕರಿ ತುರಗ ರಥವಿಶ್ರಮವನಿಂ
ದಿರುಳಿನಲಿ ನೂಕುವುದು ಹೊರವಡಿ
ಹೊರವಡೆನೆ ನಿಸ್ಸಾಳ ಸೂಳವಿಸಿದವು ಲಗ್ಗೆಯಲಿ ೫೫

ಅವರ ಸುಮ್ಮಾನವನು ಸೇನಾ
ನಿವಹ ರಭಸದ ಭೂರಿಭೇರಿಯು
ವಿವಿಧ ವಾದ್ಯಧ್ವನಿಯ ರಥಗಜಹಯದ ಗರ್ಜನೆಯ
ಇವರು ಕೇಳಿದರಕಟಕಟ ಕೌ
ರವನ ಗುಪ್ತ ಪ್ರಕಟವಾದುದೆ
ಶಿವಶಿವಾ ಹರಿಸರ್ವಗತನಹುದೆಂದನಾ ದ್ರೌಣಿ ೫೬

ಏಳು ಕುರುಪತಿ ಪಾಂಡುನಂದನ
ರಾಳು ಬರುತಿದೆ ನಾವು ನಾಲ್ವರು
ಕಾಳೆಗದೊಳಂಘೈಸುವೆವು ಬಿಡುಬಿಡು ಸರೋವರವ
ಹೇಳು ಮನವೇನೆನಲು ನೀವಿ
ನ್ನೇಳಿ ದೂರದಲಿರಿ ವಿರೋಧಿಗ
ಳಾಳು ಮಾಡುವುದೇನು ಸಲಿಲದೊಳೆಂದನಾ ಭೂಪ ೫೭

ಅನಿಮಿಷರು ಗಂಧರ್ವ ಯಕ್ಷರು
ಮುನಿದು ಮಾಡುವುದೇನು ಮಾಯದ
ಮನುಜರಿಗೆ ತಾ ಸಾಧ್ಯವಹೆನೇ ತನ್ನನರಿಯಿರಲಾ
ವಿನುತ ಸಲಿಲಸ್ತಂಭವಿದ್ಯೆಯೊ
ಳೆನಗಿರವು ಪಾತಾಳದಲಿ ಯಮ
ತನುಜನೇಗುವ ರೂಹುದೋರದೆ ಹೋಗಿ ನೀವೆಂದ ೫೮

ಉರವಣಿಸಿತರಿಸೇನೆ ಮುತ್ತಿತು
ಸರಸಿಯನು ವೇಢೆಯಲಿ ಗಿಡುಮೆಳೆ
ತರುಲತೆಯಲೊಳಕೊಂಡು ನಿಂದುದು ಚತುರ ಚತುರಂಗ
ನರರ ಗರ್ಜನೆ ವಾದ್ಯರವ ಕರಿ
ತುರಗ ನಿರ್ಘೋಷ ಪರ್ವತ
ಬಿರಿಯೆ ಮೊಳಗಿತು ಸಿಲುಕಿದನು ಸಿಲುಕಿದನು ಹಗೆಯೆನುತ ೫೯

ಇವರು ತಿರುಗಿದರಿನ್ನು ದೈವ
ವ್ಯವಸಿತವೆ ಫಲಿಸುವುದಲಾ ಕೌ
ರವನ ಸಿರಿ ಪಣ್ಯಾಂಗನಾವಿಭ್ರಮುವ ವರಿಸಿತಲಾ
ಅವರಿಗಿದನಾರರುಹಿದರೊ ಪಾಂ
ಡವರಿಗಾವುದು ಕೊರತೆ ಪುಣ್ಯ
ಪ್ರವರ ಗದುಗಿನ ವೀರನಾರಾಯಣನ ಕರುಣದಲಿ ೬೦

ಐದನೆಯ ಸಂಧಿ

ಸೂ. ಮುತ್ತಿಮೂದಲಿಸಿದರು ಕುರುರಾ
ಜೋತ್ತಮನನುದಕದಲಿ ಹೊರವಡಿ
ಸುತ್ತ ಕಂಡರು ಪಾಂಡುತನುಜರು ರೋಹಿಣೀಸುತನ

ಕೇಳು ಧೃತರಾಷ್ಟ್ರಾವನಿಪ ರಿಪು
ಜಾಲ ಜಡಿದುದು ಕೊಳನ ತಡಿಯಲಿ
ತೂಳಿದುದು ಬಲುಬೊಬ್ಬೆಯಬ್ಬರವಭ್ರಮಂಡಲವ
ಸೂಳವಿಸಿದವು ಲಗ್ಗೆಯಲಿ ನಿ
ಸ್ಸಾಳ ಬಹುವಿಧ ವಾದ್ಯರವ ಹೆ
ಗ್ಗಾಳೆಗಳು ಚೀರಿದವು ಬೈಸಿಕೆ ಬಿಡೆ ಕುಲಾದ್ರಿಗಳ ೧

ತಳಮಳಲ ಮೊಗೆಮೊಗೆದು ಕದಡಿತು
ಕೊಳನ ಜಲಚರನಿಚಯಮೀ ಬೊ
ಬ್ಬುಳಿಕೆ ಮಿಗಲೊಬ್ಬುಳಿಕೆ ನೆಗೆದವು ವಿಗತವೈರದಲಿ
ದಳವ ಬಿಗಿದಂಬುಜದೊಳಡಗಿದ
ವಳಿ ನಿಕರ ಹಾರಿದವು ಹಂಸಾ
ವಳಿ ಜವಾಯಿಲತನದಿ ಜಗುಳ್ದವು ಜಕ್ಕವಕ್ಕಿಗಳು ೨

ಬಂದುದರಿಬಲ ಕೊಳನ ತೀರದ
ಲಂದು ವೇಢೈಸಿದರು ಸರಸಿಯ
ಬಂದಿಕಾರರು ಬೊಬ್ಬಿರಿದರಬ್ಬರಕೆ ಧರೆ ಬಿರಿಯೆ
ಅಂದಣದಲೈತಂದು ಧರ‍್ಮಜ
ನಿಂದನರ್ಜುನ ಭೀಮ ಯಮಳ ಮು
ಕುಂದ ಸಾತ್ಯಕಿ ದ್ರುಪದಸೂನು ಶಿಖಂಡಿಗಳು ಸಹಿತ ೩

ವರ ಯುಧಾಮನ್ಯೂತ್ತಮೌಂಜಸ
ರಿರಲು ಪಂಚದ್ರೌಪದೀಸುತ
ರರಸ ನಿಮ್ಮ ಯುಯುತ್ಸು ಸೃಂಜಯ ಸೋಮಕಾದಿಗಳು
ಕರಿಗಳೈನೂರೈದು ಸಾವಿರ
ತುರಗಪಯದಳವೆಂಟು ಸಾವಿರ
ವೆರಡು ಸಾವಿರ ರಥವಿದರಿಮೋಹರದ ಪರಿಶೇಷ ೪

ದೇವ ಕಂಡಿರೆ ಕುರುಪತಿಯ ಮಾ
ಯಾವಿಡಂಬನವಿದ್ಯೆಯನು ನಿ
ಷ್ಠೀವನಾವಿರ್ಭೂತ ಸಲಿಲಸ್ತಂಭ ಡಂಬರವ
ಆವುದಿಲ್ಲಿಯ ವಿಧಿಯ ಸಮರ
ವ್ಯಾವಹಾರಿಕ ವಿಷಯ ತಪ್ಪದೆ
ನೀವು ಬೆಸಸುವುದೆಂದನರಸನು ದೇವಕೀಸುತನ ೫

ಭರತವಂಶಲಲಾಮ ಕೇಳ್ ನೃಪ
ಪರರ ಪದ್ಧತಿ ಕಂಟಕದಿನು
ತ್ತರಿಸುವುದು ಕಂಟಕವ ಮಾಯಾವಿಗಳ ವಿದ್ಯೆಗಳ
ಪರಿಹರಿಸುವುದು ಮಾಯೆಯಿಂ ಪ್ರತಿ
ಗರಳದಲಿ ಗರಳವನು ಮಾಯಾ
ಪರರು ಮಾಯೋಪಾಯವಧ್ಯರು ಭೂಪ ಕೇಳೆಂದ ೬

ಮರಣವೆಂದಿಂಗಾಗದಂತಿರೆ
ವರವ ಕೊಂಡು ಹಿರಣ್ಯಕಾಸುರ
ಸುರನರೋರಗರನು ವಿಭಾಡಿಸಿ ಧರ್ಮಪದ್ಧತಿಗೆ
ಧರಧುರವ ಮಾಡಿದಡೆ ನರಕೇ
ಸರಿಯ ರೂಪಿನೊಳಾದಿವಿಷ್ಣು
ಭರನು ಗೆಲಿದನು ಮಾಯೆಯನು ಮಾಯಾಭಿಯೋಗದಲಿ ೭

ಲಲಿತ ವೈದಿಕ ಧರ್ಮಮಾರ್ಗವ
ನಳಿದು ಹೆಚ್ಚಿದ ಕಾಲನೇಮಿಯ
ತಲೆಯ ಕೊಂಡನು ಚಕ್ರದಲಿ ದೈತ್ಯಾರಿ ಪೂರ್ವದಲಿ
ಬಲನ ಜಂಭನ ವೃತ್ರನನು ಶ್ರಂ
ಖಳಿತ ಮಾಯರ ಮಾಯೆಯಿಂದವೆ
ಬಲವಿರೋಧಿ ವಿಭಾಡಿಸಿದನವನೀಶ ಕೇಳೆಂದ ೮

ಹರನ ವರದಲಿ ಹೆಚ್ಚಿ ಭಸ್ಮಾ
ಸುರನು ಶಿವನ ವಿರೋಧಿಸಿದನು
ಬ್ಬರದವನನುರುಹಿದನು ಹರಿ ಮಾಯಾಪ್ರಯೋಗದಲಿ
ಸುರರನರೆಯಾಳಿದನು ಭುವನವ
ನೊರಲಿಸಿದ ರಾವಣನ ರೂಢಿಯ
ಶಿರವ ನರರೂಪಿನಲಿ ಖತಿಯಲಿ ರಾಮ ಖಂಡಿಸಿದ ೯

ಎಮಗೆ ತಾಯೊಡಹುಟ್ಟಿದನು ನಿ
ರ್ಮಮತೆಯಲಿ ನಿರ್ದಾಟಿಸಿದನಾ
ಕ್ರಮದಲೇ ಕಂಸಂಗೆ ಹಿಂಸಾಕೃತಿಯ ರಚಿಸಿದೆವು
ಸಮರದೊಳಗೆ ಸೃಗಾಲನೃಪನಾ
ಕ್ರಮಿಸಿದನು ಠಕ್ಕಿನಲಿ ಮಾಯಾ
ತಿಮಿರವನು ಮಾಯೆಯಲಿ ಗೆಲಿದೆವು ಭೂಪ ಕೇಳೆಂದ ೧೦

ಕಾಲಯುವನನ ದಂತವಕ್ರನ
ಸಾಲುವನ ಮಾಗಧನ ನರಕನ
ಸೀಳಿದೆವು ಕೃತಮಾಯರನು ಮಾಯಾಪ್ರಪಂಚದಲಿ
ಘಾಳರನು ಧವಳರನು ಠಕ್ಕಿನ
ಠೌಳಿಕಾರರನವರ ವಿದ್ಯೆಯ
ಲಾಳಿಗೊಂಡಡೆ ದೋಷವಿಲ್ಲವನೀಶ ಕೇಳೆಂದ ೧೧

ದ್ಯೂತ ಮೃಗಯಾವ್ಯಸನವಿವು ನೃಪ
ಜಾತಿಗಾದ ವಿನೋದ ಕಪಟ
ದ್ಯೂತವಿದು ನೃಪಧರ್ಮವೇ ಮಾಯಾಭಿಯೋಗದಲಿ
ಸೋತಿರಿಳೆಯನದಂತಿರಲಿ ನಿ
ರ್ಭೀತಿಯಲಿ ನಿಮ್ಮರಸಿಯುಟ್ಟುದ
ನೀತ ಸುಲಿಸಿದನಿವನು ಸುಜನನೆ ಭೂಪ ಹೇಳೆಂದ ೧೨

ಐಹಿಕದ ಸಂಭಾವನೆಯ ಸ
ಮ್ಮೋಹನಕೆ ಮರುಳಾಗಿ ಸುಕೃತ
ದ್ರೋಹವಾಗದಲೇ ಸುಯೋಧನವಧೆಯ ದೆಸೆಯಿಂದ
ಈ ಹದನ ಬಿನ್ನೈಸಿದೆವು ನೀ
ವಾಹವಕೆ ಧರ್ಮಾರ್ಥಶಾಸ್ತ್ರವ
ನೂಹಿಸಿದಿರೆಂದರಸ ನುಡಿಸಿದನಿತ್ತ ಕುರುಪತಿಯ ೧೩

ಏಳು ಕೌರವರಾಯ ಸಲಿಲ
ವ್ಯಾಳನೇ ನೀನಕಟ ಜಲದೊಳ
ಗಾಳುವರೆ ಕಾಳಾಯ್ತು ನಿನ್ನಲಿ ಗರುವ ಶಶಿವಂಶ
ಕಾಳೆಗದೊಳದ್ದಿದೆ ಸಹೋದರ
ಜಾಲ ಪುತ್ರಜ್ಞಾತಿ ಬಂಧು ನೃ
ಪಾಲರನು ನೀ ನೀರೊಳಡಗಿದೆ ಕಷ್ಟವಾಯ್ತೆಂದ ೧೪

ಜಾತಿಮಾತ್ರದಮೇಲೆ ಬಂದ
ಖ್ಯಾತಿವಿಖ್ಯಾತಿಗಳು ನವಗೆನೆ
ಜಾತರಾದೆವು ನಾವು ನಿರ್ಮಳಸೋಮವಂಶದಲಿ
ಭೀತಿಯಲಿ ನೀ ನೀರ ಹೊಕ್ಕಡೆ
ಮಾತು ತಾಗದೆ ತಮ್ಮನಕಟಾ
ಬೂತುಗಳ ಕೈಬಾಯ್ಗೆ ಬಂದೈ ತಂದೆ ಕುರುರಾಯ ೧೫

ನಾಡೊಳರ್ಧವ ಕೊಡದೆ ಹೋದಡೆ
ಬೇಡಿದೈದೂರುಗಳ ಕೊಡುಯೆನ
ಲೇಡಿಸಿದಲೈ ಸೂಚಿಯಗ್ರಪ್ರಮಿತಧಾರುಣಿಯ
ಕೂಡೆ ನೀ ಕೊಡೆನೆಂದು ದರ್ಪವ
ಮಾಡಿ ಸಕಲ ಮಹೀತಳವ ಹೋ
ಗಾಡಿ ಹೊಕ್ಕೈ ಜಲವನಾವೆಡೆ ನಿನ್ನ ಛಲವೆಂದ ೧೬

ಹೇಳಿದರಲಾ ಭೀಷ್ಮವಿದುರರು
ಮೇಲುದಾಯದ ತಾಗುಥಟ್ಟನು
ಕೇಳದಖಿಳಾಕ್ಷೋಹಿಣಿಯ ಕ್ಷತ್ರಿಯರ ತಡೆಗಡಿಸಿ
ಕಾಳೆಗದೊಳೊಟ್ಟೈಸಿ ನೀರೊಳು
ಬೀಳುವುದ ನಿನಗಾರು ಬುದ್ಧಿಯ
ಹೇಳಿದರು ನುಡಿ ನುಡಿ ಸುಯೋಧನ ಎಂದನಾ ಭೂಪ ೧೭

ಕಂಡೆವಂದೊಬ್ಬನ ಪಲಾಯನ
ಪಂಡಿತನನುತ್ತರನನಾತನ
ಗಂಡ ನೀನಾದೈ ಪಲಾಯನಸಿರಿಯ ಸೂರೆಯಲಿ
ಭಂಡರಿಬ್ಬರು ಭೂಮಿಪರೊಳಾ
ಭಂಡನಿಗೆ ನೀ ಮಿಗಿಲು ಸಲಿಲದ
ಕೊಂಡದಲಿ ಹೊಕ್ಕನೆ ವಿರಾಟಜನೆಂದನಾ ಭೂಪ ೧೮

ಅಡವಿಯೇ ನೆಲೆ ಪಾಂಡುಸುತರಿಗೆ
ಕೊಡೆನು ಧರಣಿಯನೆಂದು ಖಡುಗವ
ಜಡಿದೆಲಾ ನಿನ್ನೋಲಗದ ನಾರಿಯರ ಸಮ್ಮುಖದಿ
ಖಡುಗವನು ಕಳನೊಳಗೆ ಹಾಯಿಕಿ
ನಡುಗೊಳನ ನೀನೋಡಿ ಹೊಕ್ಕಡೆ
ಮಡದಿಯರು ತಮತಮಗೆ ನಗರೇ ಹೊಯ್ದು ಕರತಳವ ೧೯

ಜೀವಸಖ ರಾಧೇಯನಾತನ
ಸಾವಿನಲಿ ನೀನುಳಿದೆ ಸೋದರ
ಮಾವ ಶಕುನಿಯು ಸೈಂಧವನ ದುಶ್ಶಾಸನಾದಿಗಳ
ಸಾವಿನಲಿ ಹಿಂದುಳಿದ ಜೀವನ
ಜೀವನವೆ ಜೀವನನಿವಾಸವಿ
ದಾವ ಗರುವಿಕೆ ಕೊಳನ ಹೊರವಡು ಕೈದುಗೊಳ್ಳೆಂದ ೨೦

ಓಡಿ ಕೈದುವ ಹಾಯ್ಕಿ ಕಳನೊಳು
ಹೇಡಿಗರ ಹಿಡಿದಳುಕಿ ಬದುಕಿದ
ಗೂಡಿಹುದೆ ಗರುವಾಯಿಯಲಿ ಕಲ್ಪಾಂತಪರಿಯಂತ
ಓಡಿ ಪಾತಾಳವನು ಹೊಕ್ಕಡೆ
ಕೂಡೆ ಸಂಧಿಸಿ ನಿನ್ನ ಬೇಂಟೆಯ
ನಾಡದಿಹ ಠಾವುಂಟೆ ಕುರುಪತಿ ಕೈದುಗೊಳ್ಳೆಂದ ೨೧

ಭರತ ನಹುಷ ಯಯಾತಿ ನಳ ಸಂ
ವರಣ ಸಗರ ದಿಳೀಪ ನೃಗ ರಘು
ವರ ಪುರೂರವ ದುಂದುಮಾರ ಭಗೀರಥಾದಿಗಳು
ಧರಣಿಪಾಲರನಂತಸವರರದೊ
ಳರಿಬಲವ ಸವರಿದರು ನಿನ್ನವೊ
ಲುರುಳಿದವರಾರುದಕದಲಿ ನೃಪ ಕೈದುಗೊಳ್ಳೆಂದ ೨೨

ಕೊಳನ ಬಿಡು ಕಾದೇಳು ಹಿಂದಣ
ಹಳಿವ ತೊಳೆ ಹೇರಾಳ ಬಾಂಧವ
ಬಳಗ ಭೂಮೀಶ್ವರರ ಬಹಳಾಕ್ಷೋಹಿಣೀದಳವ
ಅಳಿದ ಕೀರ್ತಿಯ ಕೆಸರ ತೊಳೆ ಭೂ
ವಳಯಮಾನ್ಯನು ದೈನ್ಯವೃತ್ತಿಯ
ಬಳಸುವರೆ ಸುಡು ಮರುಳೆ ಕುರುಪತಿ ಕೈದುಗೊಳ್ಳೆಂದ ೨೩

ವಿಷವನಿಕ್ಕಿದೆ ಹಾವಿನಲಿ ಬಂ
ಧಿಸಿದೆ ಮಡುವಿನೊಳಿಕ್ಕಿ ಬಳಿಕಂ
ಬ್ಬಸವ ಮಾಡಿದೆ ಹಿಂದೆ ಮನಮುನಿಸಾಗಿ ಬಾಲ್ಯದಲಿ
ವಸತಿಯಲಿ ಬಳಿಕಗ್ನಿದೇವರ
ಪಸರಿಸಿದೆ ಪುಣ್ಯದಲಿ ನಾವ್ ಜೀ
ವಿಸಿದೆವಡಗಿದಡಿನ್ನು ಬಿಡುವೆನೆಯೆಂದನಾ ಭೀಮ ೨೪

ಎಲವೊ ರಾಯನ ಪಟ್ಟದರಸಿಯ
ಸುಲಿಸಿದಾ ಛಲವೆಲ್ಲಿ ಹಗೆಗಳ
ಹಳುವದಲಿ ಹೊಗಿಸಿದೆನೆನಿಪ ಸುಮ್ಮಾನ ತಾನೆಲ್ಲಿ
ಖಳ ಶಿರೋಮಣಿ ನಿನ್ನ ತಲೆಗೂ
ದಲಲಿ ಕೈಗಳ ಕಟ್ಟಿ ಖೇಚರ
ನೆಳೆಯೆ ಬಿಡಿಸಿದರಾರು ಕೌರವ ಎಂದನಾ ಭೀಮ ೨೫

ಭೀಮನೆನೆ ಭುಗಿಲೆಂಬ ರೋಷದ
ತಾಮಸವ ಬೀಳ್ಕೊಟ್ಟೆಲಾ ನಿ
ರ್ನಾಮವಾದುದೆ ಬಿರುದು ಪಾಂಡವತಿಮಿರರವಿಯೆಂಬ
ಭೀಮವನದಾವಾಗ್ನಿ ಹೊರವಡು
ಭೀಮಭಾಸ್ಕರರಾಹು ಹೊರವಡು
ಭೀಮಗರ್ಜನೆ ಮಧುರಗೀತವೆ ನೃಪತಿಯೇಳೆಂದ ೨೬

ಕೆಡಹಿ ದುಶ್ಶಾಸನನ ರಕುತವ
ಕುಡಿದವನು ತಾನಲ್ಲಲೇ ನಿ
ನ್ನೊಡನೆ ಹುಟ್ಟಿದ ನೂರ ನುಂಗಿದ ಕಾಲಯಮನಲ್ಲಾ
ಅಡಗಿದಡೆ ಬಿಡುವೆನೆ ಭಯಜ್ವರ
ಹಿಡಿದ ನಿನ್ನನು ಸೆಳೆದು ರಣದಲಿ
ತೊಡೆಯ ಕಳಚುವ ಮತ್ತು ಭೀಮನ ಕಯ್ಯ ನೋಡೆಂದ ೨೭

ಜಲವಹೊಕ್ಕನ ಹುಲ್ಲ ಕಚ್ಚಿದ
ಖಳನ ತರುಗಿರಿಶಿಖರದಲಿ ಕಾ
ಲ್ವೊಳಸಿದನ ವಲ್ಮೀಕಸಂಗತನನು ನಿರಾಯುಧನ
ಕೊಲುವುದನುಚಿತವೆಂಬ ಶಾಸ್ತ್ರವ
ತಿಳಿದು ನಂಬಿದೆ ನಿನ್ನನೊಬ್ಬನ
ಕೊಲುವುದಕೆ ಶ್ರುತಶಾಸ್ತ್ರರಾವಲ್ಲೆಂದನಾ ಭೀಮ ೨೮

ಅರಸನಲಿ ಹಗೆಯಿಲ್ಲ ಯಮಳರು
ತರಳರಲಿ ಮುನಿಸಿಲ್ಲ ಫಲುಗುಣ
ನರೆವಿರೋಧಿ ಸಗರ್ವಿ ಭೀಮನ ಬಾಡ ಕೊಯ್ಕೊಯ್ದು
ಮರುಳ ಬಳಗವ ತಣಿಸಿದಡೆ
ಹಿರಿಯರರಸರಲಿ ಸಂಧಾನವೆಂಬೈ
ಕುರು ಪತಿಯೆ ನೆರೆ ವೈರಿ ಭೀಮನ ಸೀಳಲೇಳೆಂದ ೨೯

ತನತನಗೆ ಸಾತ್ಯಕಿ ಯಮಳ ಫಲು
ಗುಣರು ಪಂಚದ್ರೌಪದೀನಂ
ದನರು ಧೃಷ್ಟದ್ಯುಮ್ನ ಸೃಂಜಯ ಸೋಮಕಾದಿಗಳು
ಅನುಚಿತವು ಸಲಿಲಪ್ರವೇಶವು
ಜನಪತಿಗೆ ಕರ್ತವ್ಯವೆಂಬುದು
ಜನಜನಿತವೆಂದುಲಿದುದೈದೆ ಸಮುದ್ರಘೋಷದಲಿ ೩೦

ಅರಸ ಕೇಳೈ ನಿನ್ನ ಮಗನು
ಬ್ಬರಿಸಿದನು ರೋಮಾಂಚದಲಿ ಗ
ಬ್ಬರಿಸುತಧಿಕಕ್ರೋಧಶಿಖಿ ಕರಣೇಂದ್ರಿಯಾದಿಗಳ
ತುರಗಿದಂತಃಖೇದ ಮಂತ್ರಾ
ಕ್ಷರಕೆ ಜವನಿಕೆಯಾದುದೈ ನಿ
ರ್ಭರದ ವೀರಾವೇಶದಲಿ ಪಲ್ಲಟಿಸಿದನು ಭೂಪ ೩೧

ಮರೆದುದುದಕಸ್ತಂಭ ಸಲಿಲದ
ಹೊರಗೆ ಬೊಬ್ಬುಳಿಕೆಗಳ ತೆರೆ ನೊರೆ
ದುರುಗಿದವು ಘುಳುಘುಳಿಸಿ ಜಲಬುದ್ಬುದದ ಚೂಣಿಯಲಿ
ದುರುದುರಿಪ ಬಿಸುಸುಯ್ಲ ಸೆಕೆಯಲಿ
ಮರುಗಿ ಕುದಿದುದು ನೀರು ಭೀಮನ
ಬಿರುನುಡಿಯ ಬೇಳಂಬದಲಿ ಬೆಂಡಾದನಾ ಭೂಪ ೩೨

ಜ್ಞಾನವಳಿದುದು ವೀರಪಣದಭಿ
ಮಾನ ಮಸೆದುದು ಮಂತ್ರನಿಷ್ಠೆಯ
ಮೌನ ಹಿಂಬೆಳೆಯಾಯ್ತು ಮೋಹಿದುದಾಹವವ್ಯಸನ
ದೀನಮುನ ಹೊರಗಳೆದುದುದಕ
ಸ್ಥಾನಭಾವಕೆ ನಾಚಿದನು ತವ
ಸೂನು ತಳವೆಳಗಾದನಹಿತವಚೋವಿಘಾತದಲಿ ೩೩

ಜಲಧಿ ಮಧ್ಯದೊಳೇಳ್ವ ವಡಬಾ
ನಲನವೊಲು ತವಕದಲಿ ತಡಿಗ
ವ್ವಳಿಸಿದನು ತತ್ಕ್ರೋಧಶಿಖಿ ಕಿಡಿಮಸಗೆ ಕಂಗಳಲಿ
ಹೊಳೆವ ಭಾರಿಯ ಹೆಗಲ ಗದೆ ಕರ
ತಳದ ವಿಪುಳ ಸಘಾಡಗರ್ವದ
ಚಳನಯನದ ಛಡಾಳಛಲದ ನೃಪಾಲ ಹೊರವಂಟ ೩೪

ಅರಳಿತರಸನ ವದನ ಭೀಮನ
ಹರುಷವುಕ್ಕಿತು ಪಾರ್ಥನುಬ್ಬಿದ
ನುರುಮುದದಿನುರೆ ನಕುಲನುಬ್ಬರಿಸಿದನು ಸಹದೇವ
ಹರಕೆಯಲಿ ದೈವಂಗಳಿತ್ತವು
ವರವನೆಂದರು ದ್ರೌಪದೀಸುತ
ರುರು ಶಿಖಂಡಿ ದ್ರುಪದಸುತ ಸಾತ್ಯಕಿಗಳೊಲವಿನಲಿ ೩೫

ನಗೆ ಮಸಗಿ ಕರತಳವ ಹೊಯ್ಹೊ
ಯ್ದೊಗುಮಿಗೆಯ ಹರುಷದಲಿ ನಕುಲಾ
ದಿಗಳು ಬೊಬ್ಬಿರಿದಾರಿದರು ಬಹುವಾದ್ಯರವದೊಡನೆ
ಅಗಿದು ಗುಡಿಗಟ್ಟಿದವು ಮುಂಗಾ
ಲುಗಳ ಹೊಯ್ಲಲಿ ತೇಜಿಗಳು ಕೈ
ನೆಗಹಿ ಜಯಸೂಚನೆಯಲೊಲೆದವು ಪಟ್ಟದಾನೆಗಳು ೩೬

ಧರಣಿಪತಿ ಕೇಳ್ ಕೊಳನ ತಡಿಯಲಿ
ಕುರುಕುಲಾಗ್ರಣಿ ನಿಂದು ನೋಡಿದ
ನರಿಭಟರ ಸಮ್ಮಾನವನು ಸಂಭ್ರಾಂತಚೇತನವ
ಉರಿದುದಾ ಮಸ್ತಕದ ರೋಷೋ
ತ್ಕರದ ಝಳ ಝಾಡಿಸಿತು ಶುಭ್ರ
ಸ್ಫುರಣದಂತನಿಪೀಡಿತಾಧರನಾದನಾ ಭೂಪ ೩೭

ಪೂತು ಮಝ ಕುರುಪತಿಯ ಘನಸ
ತ್ವಾತಿಶಯವೈ ಕೌರವಾನ್ವಯ
ಜಾತನಲ್ಲಾ ಬುಧ ಪುರೂರವಶಕ್ರಮಾಗತರ
ಖ್ಯಾತನಲ್ಲಾ ಬಂದುದೊಂದ
ಖ್ಯಾತಿ ಸಲಿಲದ ಗಾಹವುಳಿದು
ತೀತನೊಳು ದೊರೆಯಾರು ಸರಿಯೆಂದನು ಮಹೀಪಾಲ ೩೮

ಅರಸ ತೊಡು ಕವಚವನು ಚಾಮೀ
ಕರ ಪರಿಷ್ಕೃತ ವಜ್ರಮಯ ಬಂ
ಧುರದ ಸೀಸಕವಿದೆ ದುಕೂಲವರಾನುಲೇಪನವ
ಪರಿಹರಿಸಬೇಡೊಲವಿನಲಿ ಪತಿ
ಕರಿಸೆನುತ ಪೆಟ್ಟಿಗೆಯ ಮುಚ್ಚಳ
ತೆರೆದು ಮುಂದಿರಿಸಿದನು ಸೌಹಾರ್ದದಲಿ ಯಮಸೂನು ೩೯

ಪೂರವಿಸಿದನು ಗಂಧವನು ಸರ
ಳೋರೆಪೋರೆಯ ಮೈಯ ಘಾಯದ
ಹೇರುಗಳ ಹೂಳಿದನು ವರಕಸ್ತುರಿಯ ಸಾರದಲಿ
ಸಾರತರ ಸಾದಿನ ಜವಾಜಿಯ
ಭೂರಿ ಪರಿಮಳದಿಂದ ನವಕ
ಸ್ತೂರಿ ತಿಲಕವ ರಚಿಸಿ ಗೆಲಿದನು ತಿಗುರ ತವಕದಲಿ ೪೦

ತೆಗೆದು ವಜ್ರಾಂಗಿಯನು ಮೈಯಲಿ
ಬಿಗಿದು ಹೊಂಬರಹದ ಸುರತ್ನಾ
ಳಿಗಳ ಬಲು ಸೀಸಕವನಳವಡಿಸಿದನು ಸಿರಿಮುಂಡಿಗೆ
ಝಗರಝಗಿಪ ಬೆಳುದಿಂಗಳಿನ ತೆಳು
ದಗಡೆನಲು ತೊಳಗುವ ದುಕೂಲವ
ಬಿಗಿದು ಮೊನೆ ಮುಂಜೆರಗನಳವಡಿಸಿದನು ದೇಸಿಯಲಿ ೪೧

ಘೋಳಿಸಿದ ಕರ್ಪೂರ ಕಸ್ತುರಿ
ವೀಳೆಯವ ಕೊಂಡೆದ್ದು ಸಮರಾ
ಭೀಳ ಗದೆಯನು ತಿರುಹಿದನು ಪಯಪಾಡನಾರೈದು
ಆಳು ಕವಿಯಲಿ ರಾವುತರ ಸಮ
ಪಾಳಿಯಂಲಿ ಬಿಡಿ ಜೋದರಾನೆಯ
ತೂಳಿಸಲಿ ಸಮರಥರು ಸರಳಿಸಿಯೆಂದನಾ ಭೂಪ ೪೨

ಹಿಡಿ ಧನುವನೆಲೆ ಭೂಪ ಪವನಜ
ತುಡುಕು ಗದೆಯನು ಪಾರ್ಥ ಸಮರಕೆ
ತಡೆಯದಿರು ಮಾದ್ರೀಕುಮಾರಕರೇಳಿ ಕಾಳೆಗಕೆ
ಮಿಡುಕು ಧೃಷ್ಟದ್ಯುಮ್ನ ಸಾತ್ಯಕಿ
ಹೊಡಕರಿಸು ಪಾಂಚಾಲ ನೀ ವಂ
ಗಡದೊಳೆಮ್ಮೊಡನೇಳ್ವುದೊಬ್ಬನೆ ನಿಲುವೆ ತಾನೆಂದ ೪೩

ದಿಟ್ಟನೈ ನೃಪರಾವು ಮಝು ಜಗ
ಜಟ್ಟಿಯಲ್ಲಾ ದೊರೆಗಳೊಡನೀ
ಥಟ್ಟಿಗೊಬ್ಬನೆ ನಿಲುವೆನೆಂದನದಾವ ಸತ್ವನಿಧಿ
ಹುಟ್ಟಿದವರಿಗೆ ಸಾವು ಹಣೆಯಲಿ
ಕಟ್ಟಿಹುದು ವಿಧಿಯೆಂದಡೀ ಪರಿ
ಮುಟ್ಟೆ ದೀವಸಿಯಾವನೆಂದುದು ನಿಖಿಳ ಪರಿವಾರ ೪೪

ಮೆಚ್ಚಿದನು ಯಮಸೂನು ಭಲ ನಿನ
ಗೊಚ್ಚತವಲ್ಲೈ ವೈರಿಭಟರಲಿ
ಬೆಚ್ಚಿದಾಡಿದೆಯಾದಡೇನದು ನಮ್ಮೊಳೈವರಲಿ
ಮೆಚ್ಚಿದರ ನೀ ವರಿಸಿ ಕಾದುವು
ದಚ್ಚರಿಯ ಮಾತೇನು ಗೆಲವಿನ
ನಿಚ್ಚಟನೆ ನೆಲಕೊಡೆಯನಹುದಿದು ಸಮಯಕೃತವೆಂದ ೪೫

ನಿನಗೆ ಸೋಲವೆ ನಾವು ಭೂಕಾ
ಮಿನಿಯನಾಳ್ವೆವು ನಮ್ಮೊಳೊಬ್ಬರು
ನಿನಗೆ ಸೋತಡೆ ಮಿಕ್ಕ ನಾಲ್ವರು ನಿನಗೆ ಕಿಂಕರರು
ನಿನಗೆ ಹಸ್ತಿನಪುರದ ಸಿರಿ ಸಂ
ಜನಿತವೀ ಸಂಕೇತವೇ ಸಾ
ಧನ ನಿನಗೆ ನಮಗೆಂದು ನುಡಿದನು ಧರ್ಮಸುತ ನಗುತ ೪೬

ಹಾ ಯುಧಿಷ್ಠಿರ ನಿಮ್ಮ ಕೂಡೆಮ
ಗಾಯಭಲವಿಲ್ಲರ್ಜುನನು ಮಗು
ವೀ ಯಮಳರಿಗೆ ಕೈದುಗೊಳ್ಳೆನು ಹೊಯ್ದು ಕೆಣಕಿದಡೆ
ಬಾಯಿಬಡಿಕನು ಸತ್ವದಲಿ ನಾ
ಗಾಯುತದ ಬಲವೆಂಬ ಡೊಂಬಿನ
ವಾಯುವಿನ ಮಗನೆನ್ನೊಡನೆ ಮಾರಾಂತಡಹುದೆಂದ ೪೭

ವರಿಸಿದೆನು ಭೀಮನನು ನೀವಾ
ದರಿಸುವಡೆ ಧರ್ಮವನು ದುರ್ಜನ
ಸರಣಿಯಲಿ ನೀವ್ ಬಹಡೆ ದಳಸಹಿತೈವರಿದಿರಹುದು
ತೆರಳುವವರಾವಲ್ಲ ನೀವ್ ಪತಿ
ಕರಿಸಿದುದೆ ನಮ್ಮಿಷ್ಟವೆನೆ ಮುರ
ಹರ ಯುಧಿಷ್ಠಿರನೃಪನನೆಕ್ಕಟಿಗರೆದು ಗರ್ಜಿಸಿದ ೪೮

ಮರುಳೆ ನೀ ಹೆಚ್ಚಾಳುತನಕು
ಬ್ಬರಿಸಿ ನುಡಿದೆ ಸುಯೋಧನನ ನೀ
ನರಿಯಲಾಗದೆ ಕೈಗೆ ಬಂದರೆ ಕದನಭೂಮಿಯಲಿ
ಸರಿಸದಲಿ ಮಲೆತವನು ಜೀವಿಸಿ
ಮರಳಲರಿವನೆ ನಮ್ಮೊಳೊಬ್ಬನ
ವರಿಸು ವಿಗ್ರಹಕೆಂದು ನಮ್ಮನು ಕೊಂದೆ ನೀನೆಂದ ೪೯

ಗೆಲಿದಡೈವರೊಳೊಬ್ಬನನು ಮಿ
ಕ್ಕುಳಿದವರು ಕಿಂಕರರು ಗಡ ನೀ
ತಿಳಿದು ನುಡಿದಾ ನಿನ್ನನಾಹವಮುಖಕೆ ವರಿಸಿದಡೆ
ಗೆಲಲು ಬಲ್ಲಾ ನೀನು ಫಲುಗುಣ
ಗೆಲುವನೇ ನಿನ್ನುಳಿದರಿಬ್ಬರು
ನಿಲುವರೇ ಕುರುಪತಿಯಘಾಟದ ಗದೆಯ ಘಾಯದಲಿ ೫೦

ಇಂದು ನಮ್ಮಯ ಭಾಗ್ಯಲಕ್ಷ್ಮಿಯ
ಕಂದೆರೆವೆಯಲಿ ಭೀಮ ಕಾದುವು
ದೆಂದು ಜಾರಿಸಿ ನಿಮ್ಮ ಬಿಟ್ಟನು ನಮ್ಮ ಪುಣ್ಯದಲಿ
ಇಂದಿನೀ ಸಮರದಲಿ ಪವನಜ
ನಿಂದಡೇನಹುದೆಂಬ ಚಿತ್ತದ
ಸಂದೆಯವು ನಮಗುಂಟು ಕೌರವನೈಸು ಬಲುಹೆಂದ ೫೧

ಎಲೆ ಮುರಾಂತಕ ನಿಮ್ಮ ಮುಂದ
ಗ್ಗಳಯತನವೆಮಗಿಲ್ಲ ನಿಮ್ಮಡಿ
ಗಳ ಸುಧಾಕರುಣಾವಧಾನವೆ ವಜ್ರಕವಚವಲಾ
ಮಲೆತ ಹಗೆವನ ಪಡಿಮುಖದ ಬಲು
ವಲಗೆಯಲಿ ಗದೆಯಿಂದ ರಾಯನ
ಬಲುಹ ಬಿರುದಾವಳಿಯ ಬರೆವೆನು ಕೃಷ್ಣ ಕೇಳೆಂದ ೫೨

ಪೂತು ಮಝು ಭಟ ಎನುತ ಕಂಸಾ
ರಾತಿ ಕೊಂಡಾಡಿದನು ಸಾತ್ಯಕಿ
ಭೂತಳಾಧಿಪ ಪಾರ್ಥ ಯಮಳಾದಿಗಳು ನಲವಿನಲಿ
ವಾತಜನ ಹೊಗಳಿದರು ಸಂಭಟ
ವ್ರಾತಸೌಹಾರ್ದದಲಿ ಶೌರ್ಯ
ಖ್ಯಾತಿಯನು ಬಣ್ಣಿಸಿದುದವನೀಪಾಲ ಕೇಳೆಂದ ೫೩

ಗದೆಯ ಕೊಂಡನು ಕೌರವೇಂದ್ರನ
ನಿದಿರುಗೊಂಡನು ಭೀಮ ಬಲವಂ
ಕದಲಿ ವಾಮಾಂಗದಲಿ ಬಳಸಿದರಗ್ರಜಾನುಜರು
ಕದನಭೂಮಿಯ ಬಿಡವರಿದು ನಿಂ
ದುದು ಚತುರ್ಬಲ ಸುತ್ತಿ ಗಗನದೊ
ಳೊದಗಿದುದು ಸುರನಿಕರ ತೀವಿ ವಿಮಾನವೀಥಿಯಲಿ ೫೪

ಚಟುಳತರ ಭಾರಂಕದಂಕದ
ಭಟರು ತರುಬಿದರುಬ್ಬೆಯಲಿ ಲಟ
ಕಟಿಸಿದವು ಕಣ್ಣಾಲಿ ಬದ್ಧ ಭ್ರುಕುಟಿಭಂಗದಲಿ
ಕಟುವಚನ ವಿಕ್ಷೇಪರೋಷ
ಸ್ಫುಟನವೇಲ್ಲಿತವಾಕ್ಯಭಂಗೀ
ಘಟನ ವಿಘಟನದಿಂದ ಮೂದಲಿಸಿದರು ಮುಳಿಸಿನಲಿ ೫೫

ಅರಸ ಕೇಳಿವರಿಬ್ಬರುಬ್ಬಿನ
ಧುರದ ಘಟ್ಟಣೆ ಪಸರಿಸಿತು ಸುರ
ನರರನಾ ಸಮಯದಲಿ ಪೂರ್ವೋತ್ತರದ ದೆಸೆಯಿಂದ
ವರ ಮುನಿಸ್ತೋಮದ ನಡುವೆ ಕಂ
ಧರದ ಮುಸಲದ ವಿಮಳ ನೀಲಾಂ
ಬರದ ರಾಮನ ಸುಳಿವ ಕಂಡರು ಕೃಷ್ಣ ಪಾಂಡವರು ೫೬

ಆ ನಿಖಿಳ ಪರಿವಾರದನುಸಂ
ಧಾನ ದೃಷ್ಟಿಗಳತ್ತ ತಿರುಗಿದ
ವೇನನೆಂಬೆನು ಮುಸಲಧರನಾಗಮನ ಸಂಗತಿಯ
ಈ ನರೇಂದ್ರನ ಸುಮುಖತೆಯ ಸುಂ
ಮ್ಮಾನ ಹೊಳೆದುದು ಭಯದಿ ಕುಂತೀ
ಸೂನುಗಳು ಮರೆಗೊಳುತಲಿರ್ದುದು ವೀರನರಯಣನ ೫೭

ಆರನೆಯ ಸಂಧಿ

ಸೂ. ರಂಜಿಸಿತು ತ್ರೈಭುವನವನು ರಿಪು
ಭಂಜನದ ಭಾರವಣೆ ಸುಭಟರ
ನಂಜಿಸಿತು ಕಲಿಭೀಮದುರಿಯೋಧನರ ಸಂಗ್ರಾಮ

ಕೇಳು ಧೃತರಾಷ್ಟ್ರಾವನಿಪ ಸಿರಿ
ಲೋಲ ಸಹಿತ ಯುಧಿಷ್ಠಿರಾದಿ ನೃ
ಪಾಲಕರು ಕಾಣಿಕೆಯನಿತ್ತರು ನಮಿಸಿ ಹಲಧರಗೆ
ಮೇಲುದುಗುಡದ ಮುಖದ ನೀರೊರೆ
ವಾಲಿಗಳ ಕಕ್ಷದ ಗದೆಯ ಭೂ
ಪಾಲ ಬಂದನು ನೊಸಲ ಚಾಚಿದನವರ ಚರಣದಲಿ ೧

ಇಳಿದು ಗಜಹಯರಥವ ಸುಭಟಾ
ವಳಿ ಕೃತಾಂಜಲಿ ನೊಸಲೊಳಿರೆ ಕೆಲ
ಬಲಕೆ ಸಾರ್ದರ ನೋಡಿದನು ಪಾಂಡವ ಪತಾಕಿನಿಯ
ಉಳಿದುದೀಚೆಯಲೀಸು ಬಲವಿವ
ನುಳಿದನೊಬ್ಬನೆ ದೈವಗತಿಗಾ
ರಳಲಿ ಮಾಡುವುದೇನೆನುತ ನುಡಿಸಿದನು ಕುರುಪತಿಯ ೨

ಗುರುವೊ ಗಂಗಾಸುತನೊ ಮಾದ್ರೇ
ಶ್ವರನೊ ಕರ್ಣನೊ ಸೈಂಧವನೊ ಸೋ
ದರರ ಶತಕವೊ ಪುತ್ರ ಮಿತ್ರ ಜ್ಞಾತಿ ಬಾಂಧವರೊ
ಹರಸಿ ಕರಿಗಳನಿಕ್ಕಿದಡೆ ಗೋ
ಚರಿಸದೇ ರಣವಿಜಯನಿಧಿ ಹರ
ಹರ ಎನುತ ಕರಗಿದನು ಕಡು ಕರುಣದಲಿ ಬಲರಾಮ ೩

ಆಹವದಿ ಪಾಂಡವ ಮಮ ಪ್ರಾ
ಣಾ ಹಿ ಎಂಬೀ ನುಡಿಯ ಸಲಿಸಿದೆ
ಬೇಹವರನುಳುಹಿದೆ ಕುಮಾರರ ನಿನ್ನ ಮೈದುನರ
ಗಾಹುಗತಕದಲೆಮ್ಮ ಶಿಷ್ಯಂ
ಗೀ ಹದನ ವಿರಚಿಸಿದೆ ನಿನ್ನಯ
ಮೋಹದವರೇ ಗೆಲಲಿಯೆಂದನು ಹರಿಗೆ ಬಲರಾಮ ೪

ತಿಳಿದು ನೋಡಿರೆ ರಾಮ ಧರ್ಮ
ಸ್ಥಳಕೆ ನೀವು ಸಹಾಯವಿನಿಬರ
ಗೆಲವು ನಿರ್ಮಳ ಧರ್ಮಮೂಲವೊ ಧರ್ಮವಿರಹಿತವೊ
ಛಲವ ಬಿಡಿರೇ ನಿಮ್ಮ ಶಿಷ್ಯನು
ಕಲಿವೃಕೋದರನಲ್ಲವೇ ತವೆ
ಬಳಸಬಹುದೇ ಪಕ್ಷಪಾತದೊಳೆಂದನಸುರಾರಿ ೫

ನಿವಗೆ ಪಾಂಡವ ಪಕ್ಷಪಾತ
ವ್ಯವಹರಣೆ ಹುಸಿ ನಾವಲೇ ಕೌ
ರವನ ಪಕ್ಷಾವೇಶಿಗಳು ಸಾಕಿನ್ನದಂತಿರಲಿ
ಎವಗೆ ಸರಿಯಿಬ್ಬರು ಗದಾಭ್ಯಾ
ಸವನು ನಮ್ಮಲಿ ಮಾಡಿದರು ತಾ
ವಿವರು ಕಾದಲಿ ನಾವು ನೋಡುವೆವೆಂದನಾ ರಾಮ ೬

ಎಲೆ ಮುನೀಶ್ವರ ಪೂರ್ವದಲಿ ಯದು
ಬಲ ವಿಭಾಗದಲಿವರ ದೆಸೆಯಲಿ
ಹಲಧರನು ಕೃತವರ್ಮನಾ ಪಾಂಡವರಿಗಸುರಾರಿ
ಬಳಿಕ ಸಾತ್ಯಕಿಯೀ ಹಸುಗೆಯ
ಸ್ಖಲಿತವಿದರಲಿ ರಾಮನೀ ಕುರು
ಬಲವ ಬಿಟ್ಟನದೇಕೆನುತ ಜನಮೇಜಯನು ನುಡಿದ ೭

ಕೇಳು ಜನಮೇಜಯ ಧರಿತ್ರೀ
ಪಾಲ ಸಂಧಿಯ ಮುರಿದು ಲಕ್ಷ್ಮೀ
ಲೋಲ ಬಿಜಯಂಗೈಯನೇ ಕುರುಪತಿಯನವಗಡಿಸಿ
ತಾಳಹಳವಿಗೆಯುವನು ಯಾದವ
ಜಾಲ ಸಹಿತೈತಂದು ಕಾರ್ಯದ
ಮೇಲುದಾಗಿನ ಹದನನರಿದನು ಕೃಷ್ಣನಭಿಮತವ ೮

ಎವಗೆ ಸರಿಯಿತ್ತಂಡ ನೀ ಕೌ
ರವನ ಮುರಿವೆ ಯುಧಿಷ್ಠಿರನನಾ
ಹವವ ಗೆಲಿಸುವೆ ಸಾಕು ನೃಪರಿಬ್ಬರಲಿ ಸಂವಾದ
ಎವಗೆ ತೀರ್ಥಕ್ಷೇತ್ರ ಯಾತ್ರಾ
ವ್ಯವಸಿತಕೆ ಮನವಾದುದೆಂದು
ತ್ಸವದಿನಸುರಾರಿಯನುಪಪ್ಲವ್ಯದಲಿ ಬೀಳ್ಕೊಂಡ ೯

ರಾಮ ಕಳುಹಿಸಿಕೊಂಡು ವಿಪ್ರ
ಸ್ತೋಮಸಹಿತ ಸಮಸ್ತ ಋಷಿಗಳು
ರಾಮಣೀಯಕವಸ್ತು ದಾನವ್ಯಯದ ವೈಭವಕೆ
ಸೌಮನಸ್ಯನು ರಾಗಹರದ ಮ
ಹಾಮಹಿಮ ತೀರ್ಥಾಭಿರತಿಯಲಿ
ಗೋ ಮಹಿಷ ಧನ ವಸ್ತ್ರದಿಂ ದ್ವಿಜವರರನರ್ಚಿಸಿದ ೧೦

ಗಂಗೆ ಮೊದಲಾದಮಳತರ ತೀ
ರ್ಥಂಗಳಲಿ ತದ್ವಾರಣಾಖ್ಯಾ
ನಂಗಳಲಿ ತತ್ತದ್ವಿಶೇಷವಿಧಾನ ದಾನದಲಿ
ತುಂಗವಿಕ್ರಮನೀ ಸಮಸ್ತ ಜ
ನಂಗಳೊಡನೆ ಸುತೀರ್ಥಯಾತ್ರಾ
ಸಂಗತಿಯಲೇ ಬಳಸಿದನು ಭೂಮಿಪ್ರದಕ್ಷಿಣವ ೧೧

ಅವನಿಪತಿ ಕೇಳ್ ಪುಷ್ಯದಲಿ ಸಂ
ಭವಿಸಿದುದು ನಿರ್ಗಮನ ಬಳಿಕಾ
ಶ್ರವಣನಕ್ಷತ್ರದಲಿ ಕಂಡನು ಕೃಷ್ಣಪಾಂಡವರ
ಅವರು ನೋಟಕರಾದರೀ ಕೌ
ರವ ವೃಕೋದರರಂಕ ಮಸೆದು
ತ್ಸವದಿ ಕಳನೇರಿದರು ಹಾಯಿಕಿ ಹಿಡಿದು ನಿಜಗದೆಯ ೧೨

ಧಾರುಣೀಪತಿ ಕುಳ್ಳಿರೈ ಪರಿ
ವಾರ ಕುಳ್ಳಿರಿ ಪಾರ್ಥ ಸಾತ್ಯಕಿ
ವೀರ ಧೃಷ್ಟದ್ಯುಮ್ನ ಯಮಳ ಶಿಖಂಡಿ ಸೃಂಜಯರು
ವೀರ ಭಟರೆಮ್ಮಾಹವದ ವಿ
ಸ್ತಾರವನು ಸಮ ವಿಷಮ ಪಯಗತಿ
ಯೋರೆಪೋರೆಯನರಿವುದೆಂದನು ನಗುತ ಕುರುರಾಯ ೧೩

ಚಿತ್ತವಿಸು ಬಲರಾಮ ರಿಪುಗಳ
ತೆತ್ತಿಗನೆ ಲೇಸಾಗಿ ನೋಡು ನೃ
ಪೋತ್ತಮರು ಪಾಂಚಾಲ ಸೃಂಜಯ ಸೋಮಕಾದಿಗಳು
ಇತ್ತಲಭಿಮುಖವಾಗಿ ರಥಿಕರು
ಮತ್ತಗಜದಾರೋಹಕರು ರಾ
ವುತ್ತರೀಕ್ಷಿಸಿ ನಮ್ಮ ಸಮರವನೆಂದನವನೀಶ ೧೪

ಓಡಿ ಜಲದಲಿ ಮುಳುಗಿದವರಿಗೆ
ಖೋಡಿಯುಂಟೇ ರಥವಿಳಿದ ರಣ
ಖೇಡ ಕಾಲಾಳಿಂಗೆ ಪಯಗತಿಯೋರೆಪೋರೆಗಳೆ
ನೋಡುತಿದೆ ಪರಿವಾರ ನೀ ಕೈ
ಮಾಡಿ ತೋರಾ ಬರಿಯ ಕಂಠದ
ಮೂಡಿಗೆಯ ಡಾವರದ ಲೇಸಹುದೆಂದನಾ ಭೀಮ ೧೫

ಆಟವಿಕ ಸಂಗದಲಿ ಬಹುವಾ
ಚಾಟ ನೀನಹೆ ನಿನ್ನ ಪುಣ್ಯದ
ತೋಟವನು ತರಿದೊಟ್ಟಿ ನಿಮ್ಮೈವರನು ಯಮಪುರದ
ಗೋಟಿನಲಿ ಗುರಿಮಾಡುವೆನು ಜೂ
ಜಾಟದಲಿ ನೀವರಿಯಿರೇ ಬೊ
ಬ್ಬಾಟವಂದೇನಾಯಿತೆಂದನು ಜರೆದು ಕುರುರಾಯ ೧೬

ಶಕುನಿ ಕಲಿಸಿದ ಕಪಟದಲಿ ಕೌ
ಳಿಕದಲುಬ್ಬಿದಿರಿದರ ವಿಸ್ತಾ
ರಕರರೇ ನಾವಿಂದಿನಲಿ ದುಶ್ಶಾಸನಾದಿಗಳ
ರಕುತಪಾನ ಭವತ್ಸಹೋದರ
ನಿಕರನಾಶನವರುಹದೇ ಸಂ
ಪ್ರಕಟವಿದು ಜಗಕೆಂದು ಗದೆಯನು ತೂಗಿದನು ಭೀಮ ೧೭

ಸಾಯಲಾಗದೆ ಸುಭಟರಾಚಂ
ದ್ರಾಯತವೆ ತನು ವಿಧಿಯ ಟಿಪ್ಪಣ
ದಾಯಸವು ತೀರಿದಡೆ ಸಾವರು ನಿನ್ನಲೇನಹುದು
ಕಾಯಲಳವೇ ನಿನಗೆ ಮುನಿದಡೆ
ನೋಯಿಸುವಡಳವಲ್ಲ ಘಡ ದೈ
ವಾಯತಕೆ ನೀನೇಕೆ ಬೆರತಿಹೆಯೆಂದನಾ ಭೂಪ ೧೮

ಎಲವೊ ದುರ್ಮತಿ ನಿನ್ನ ಕೌರವ
ಕುಲದ ಶಿಕ್ಷಾರಕ್ಷೆಗಿನ್ನಾ
ರೊಳರು ಹೊರಬಿಗ ದೈವವುಂಟೇ ತಾನೆ ದೈವ ಕಣಾ
ಕಳಚಿದೆನಲಾ ಕೊಂದು ನೂರ್ವರ
ತಲೆಯನಿನ್ನರೆಘಳಿಗೆಯಲಿ ಹೆಡ
ತಲೆಯನೊದೆವೆನು ಹೋಗೆನುತ ಹೊಯ್ದನು ಸುಯೋಧನನ ೧೯

ಬಿಡಿಸಿದಡೆ ಗದೆಯಿಂದ ಹೊಯ್ಲುಗಳ
ತಡೆದು ತಿವಿದನು ನಿನ್ನ ಮಗನವ
ಗಡದ ಘಾಯಕೆ ಗದೆಯನೊಡ್ಡಿ ಸಗಾಢ ಕೋಪದಲಿ
ತುಡುಕಿದನು ಕಲಿಭೀಮ ಹಜ್ಜೆಯೊ
ಳೆಡೆಮುರಿದು ನಿನ್ನಾತನೌಕಿದ
ರೊಡನೊಡನೆ ಗಾಹಿಸಿದರುಚಿತದ ಗತಿಯ ಗಮಕದಲಿ ೨೦

ಹೊಯ್ದು ಬಿಡಿಸಿದಡನಿಲಜನ ಮೇ
ಲ್ವಾಯ್ದನವನಿಪನೊಡ್ಡಿ ಗದೆಯಲಿ
ಕಾಯ್ದು ತಿವಿದನು ಭೀಮಸೇನನ ನೃಪತಿ ವಂಚಿಸಿದ
ಮೆಯ್ದೆಗೆದಡಿಟ್ಟಣಿಸಿ ಪವನಜ
ಹೊಯ್ದಡೊಲೆದನು ಭೂಪನಿಬ್ಬರ
ಕಯ್ದುಕಾರತನಕ್ಕೆ ಬೆರಗಾದುದು ಸುರಸ್ತೋಮ ೨೧

ಸುಳಿದರೆಡಬಲ ಚಾರಿಯಲಿ ಚಾ
ಪಳದ ಪಯಪಾಡಿನಲಿ ಚಿತ್ರದ
ಚಳಗತಿಯ ಚೇತನದ ಚಡ್ಡಣೆಗಳ ಚಡಾಳದಲಿ
ಹೊಳೆದರಾವರ್ತದಲಿ ಪರಿಮಂ
ಡಳಿಸಿದರು ಠಾಣದಲಿ ಜಂಘೆಯ
ಲುಳಿಯ ಲವಠಾಣದಲಿ ಮೆರೆದರು ಭೀಮ ಕೌರವರು ೨೨

ಒಳಹೊಗುವ ಹೆರತೆಗೆವ ಘಾಯವ
ಕಳಚುವವಧಾನದಲಿ ದೃಷ್ಟಿಯ
ಬಳಿಗೆ ಕೈಮಾಡುವ ವಿಘಾತಿಗೆ ಜಗುಳ್ವ ಝಾಡಿಸುವ
ಸುಳಿವ ಸಂತೈಸುವ ಸುಸಂಚದೊ
ಳಳವರಿವ ವಂಚಿಸುವ ಗಮನಿಕೆ
ಯಳಬಳವನಾರೈವ ಭಟರೊದಗಿದರು ಸಮರದಲಿ ೨೩

ಬಿಡುವ ಬಿಡಿಸುವ ಪರರ ಘಾಯವ
ತಡೆವ ಗೋಮೂತ್ರಕದ ಚಿತ್ರದ
ಝಡಪದವಧಾನದ ವಿಧಾನದ ಘಾಯಖಂಡಿಗಳ
ತುಡುಕುವವ್ವಳಿಸುವ ವಿಸಂಧಿಯ
ಹಿಡಿವ ಬಿಚ್ಚುವ ಬಿಗಿವ ಸೆಳೆವವ
ಗಡಿಸುವೌಕುವ ಕುಶಲದಲಿ ಕಾದಿದರು ಸಮರದಲಿ ೨೪

ಬವರಿ ಮತ್ಸ್ಯೋದ್ಗತಿ ವಿಲಂಘನ
ವಿವಳಿತಾಂಗ ವರಾಹಮಂತ ಸಂ
ಪ್ಲವನ ಪಾರಿಪ್ಲವ ಗದಾಪರಿರಂಭ ವಿಕ್ಷೇಪ
ಲವಣಿ ಲಹರಿಯುಂದಂಚ ನವ ವಿ
ದ್ರವಣ ಲಘುವಿನ್ಯಸ್ತವೆಂಬೀ
ವಿವರದಲಿ ಕಾದಿದರು ಕೌತುಕವೆನಲು ಸುರನಿಕರ ೨೫

ನೂಕಿದರೆ ಹೆರತೆಗೆವ ಹೆರತೆಗೆ
ದೌಕುವೌಕಿದಡೊತ್ತು ವೊತ್ತಿದ
ಡಾಕೆಯಲಿ ಪಂಠಿಸುವ ಪಂಠಿಸೆ ಕೂಡೆ ಸಂಧಿಸುವ
ಆ ಕಠೋರದ ಕಯ್ದು ಕಿಡಿಗಳ
ನೋಕರಿಸೆ ಖಣಿಖಟಿಲ ಝಾಡಿಯ
ಜೋಕೆಯಲಿ ಕಾದಿದರು ಸಮಬಲರಾಹವಾಗ್ರದಲಿ ೨೬

ಮರಹ ಪಡೆಯರು ಘಾಯ ಖಂಡಿಗೆ
ತೆರಹುಗಾಣರು ಹೊಯ್ಲಹೋರಟೆ
ಹೊರಗೆ ಬಿದ್ದವು ಕದ್ದವಿಬ್ಬರ ದೃಷ್ಟಿ ಮನಮನವ
ಇರಿವ ಗದೆ ನೆಗ್ಗಿದವು ರೋಷದಿ
ಜರೆವ ನುಡಿ ತಾಗಿದವು ಹೊಗಳುವ
ಡರಿಯೆನಗ್ಗದ ಭೀಮ ದುರಿಯೋಧನರ ರಣರಸವ ೨೭

ಗಾಹಿನಲಿ ಗಾಢಿಸಿದ ಗದೆ ಹೊರ
ಬಾಹೆಯಲಿ ಹಿಂಗಿದವು ಠಾಣದ
ಲೂಹಿಸಿದ ಮನ ಮುಗ್ಗಿದುದು ಕಂದೊಳಲ ತೋಹಿನಲಿ
ಕಾಹುರದ ಹೊಯ್ಲುಗಳು ನೋಟದ
ಕಾಹಿನಲಿ ಕಿಡಿಗೆದರೆ ಘಾಯದ
ಸೋಹೆಯರಿವ ಸುಜಾಣರೊದಗಿದರರಸ ಕೇಳೆಂದ ೨೮

ನೆನಹು ನೆಗ್ಗಿದುದುಪ್ಪರದ ಕೈ
ಮನವ ಕಬಳಿಸಿ ತೆರಹು ಬಿರಿಬಿ
ವ್ಮನಲಿ ಬಿಗಿದುದು ತೆಗೆದವಿಬ್ಬರ ಘಾಯಘಾತಿಗಳು
ಕೊನರ್ವ ಕೋಪದ ಕುದಿವ ಕರಣದ
ತನುವಿಗುಪ್ತಿಯ ಜಯದ ತವಕದ
ತನಿಮನದ ಕಡುತೋಟಿಕಾರರು ಕಾದಿದರು ಕಡುಗಿ ೨೯

ಜಾಣು ಜಗುಳಿತು ಹೊಯ್ಲು ಮೊನೆ ಮು
ಗಾಣಿಕೆಗೆ ಲಟಕಟಿಸಿದುದು ಬರಿ
ರೇಣುಜನನದ ಜಾಡ್ಯವೇ ಪಡಪಾಯ್ತು ಪಯುಗತಿಗೆ
ತ್ರಾಣ ತಳವೆಳಗಾಯ್ತು ಶ್ರವ ಬಿ
ನ್ನಾಣ ಮೇಲಾಯಿತ್ತು ಕುಶಲದ
ಕೇಣದಲಿ ಕಾದಿದರು ಗದೆಗಳ ಕಿಡಿಯ ಕಿಡಿ ತಿವಿಯೆ ೩೦

ವಿಲಸದಪಸವ್ಯದಲಿ ರಿಪು ಮು
ಡಳಿಸಿ ಹೊಯ್ದನು ಸವ್ಯಮಂಡಲ
ವಲಯದಿಂದಾ ಭೀಮಸೇನನ ಹೊಯ್ಲು ಹೊರಬೀಸಿ
ಒಳಬಗಿದು ಕಿಬ್ಬರಿಯ ಕಂಡ
ಪ್ಪಳಿಸಿದನು ನಿನ್ನಾತನಾಚೆಯ
ದಳದ ಭಟತತಿ ಹಾಯೆನಲು ಝೋಂಪಿಸಿದನಾ ಭೀಮ ೩೧

ಆಗಳೇ ಸಂತೈಸಿ ರಿಪು ಕೈ
ದಾಗಿಸಿದನರಸನನು ಘಾಯದ
ಬೇಗಡೆಯಲುಚ್ಚಳಿಸಿದುದು ಬಿಸಿರಕುತ ಹುಡಿ ನನೆಯೆ
ಆ ಗರುವನದ ಬಗೆವನೇ ಸರಿ
ಭಾಗರಕುತವನನಿಲಸುತನಲಿ
ತೂಗಿ ತೆಗೆದವೊಲಾಯ್ತು ಹೊಯ್ಸನು ಪವನನಂದನನ ೩೨

ಸೈರಿಸಿದವೆರಡಂಕ ತೆಗೆದವು
ದೂರದಲಿ ದುರುದುರಿಪ ರಕುತದ
ಧಾರೆಗಳ ತೊಳೆದೊರಸಿದರು ಸಿರಿಖಂಡ ಕರ್ದಮವ
ವೀರಕೇಳೀಶ್ರಮವಡಗೆ ಕ
ರ್ಪೂರ ವೀಳೆಯಗೊಂಡು ಮತ್ತೆ ಮ
ಹಾರುಭಟೆಯಲಿ ಸುಭಟರೆದ್ದರು ತೂಗಿ ನಿಜಗದೆಯ ೩೩

ಮತ್ತೆ ಹೊಕ್ಕರು ದಿಗ್ಗಜಕೆ ಮದ
ಮತ್ತದಿಗ್ಗಜ ಮಲೆತವೊಲು ವಿಂಗೆ
ಹತ್ತಿದರು ಶತಮನ್ಯು ಜಂಭನ ಜೋಡಿಯಂದದಲಿ
ತತ್ತರಿಬ್ಬರು ಮೂಕದನುಜನ
ಕೃತ್ತಿವಾಸನವೋಲು ರಣಧೀ
ರೋತ್ತಮರು ಕಯ್ಯಿಕ್ಕಿದರು ಕೌರವ ವೃಕೋದರರು ೩೪

ಏನನೆಂಬೆನು ಜೀಯ ಕುರುಪತಿ
ಯಾನುವನು ಕಲಿಭೀಮನುಬ್ಬೆಯ
ನಾನುವನು ದುರಿಯೋಧನನ ಘಟ್ಟಣೆಯನಾ ಭೀಮ
ದಾನವರು ಮಾನವರೊಳಿನ್ನು ಸ
ಘಾನರಾರಿವರಂತೆ ಪಾಂಡವ
ರ್ಗೇನಸಾಧ್ಯವು ವೀರನಾರಾಯಣನ ಕರುಣದಲಿ ೩೫

ಏಳನೆಯ ಸಂಧಿ

ಸೂ. ರಾಯ ಭಾರತ ವೀರರಾಯನು
ರಾಯ ವನದಾವಾನಳನು ಕಲಿ
ವಾಯು ತನುಜನ ಹಳಚಿ ಮಡಿದನು ಕೌರವರ ರಾಯ

ಕೇಳು ಧೃತರಾಷ್ಟ್ರಾವನಿಪ ಕೈ
ಮೇಳವಿಸಿದರು ವಿಷಮ ಸಮರಕ
ರಾಳರೋಷಶ್ವಾಸಧೂಮಳಮುಖಭಯಂಕರರು
ಚಾಳನದ ಚೌಪಟರು ಶಸ್ತ್ರಾ
ಸ್ಫಾಳನದ ವಜ್ರಾಭಿಘಾತಾ
ಭೀಳನಿಷ್ಠುರರೊದಗಿದರು ಕೌರವ ವೃಕೋದರರು ೧

ಹಳಚಿದರು ಸುಳಿ ಘಾಳಿಯಂತಿರೆ
ಸುಳಿದು ಖಗಪತಿಯಂತೆ ಹೊಯ್ಲಲಿ
ಬಳಸಿ ಬಿಗಿದೆರಗಿದರು ಬಿಡೆಯದ ಮತ್ತಗಜದಂತೆ
ಅಳುವಿದರು ಶಿಖಿಯಂತೆ ಚೂರಿಸಿ
ನಿಲುಕಿದರು ಫಣಿಯಂತೆ ಪಯಮ್ಯೈ
ಲುಳಿಯುಲೊಲೆದರು ಪಾದರಸದಂದದಲಿ ಪಟುಭಟರು ೨

ಎರಗಿದರು ಸಿಡಿಲಂತೆ ಮಿಂಚಿನ
ಮಿರುಗಿನಂತಿರೆ ಹೊಳೆದು ಹಜ್ಜೆಯ
ಹೆರದೆಗೆದು ಹಾಯಿದರು ತಗರಂದದಲಿ ತವಕದಲಿ
ಇರುಕಿದರು ಗ್ರಹದಂತೆ ಮಿಗೆ ಮು
ಕ್ಕುರುಕಿದರು ಮುಗಿಲಂತೆ ರೋಷಕೆ
ನೆರೆಯದಿಬ್ಬರ ಮನವೆನಲು ಹೊಯ್ದಾಡಿದರು ಭಟರು ೩

ಗದೆಗದೆಯ ಹೊಯ್ಲುಗಳ ಖಣಿಖಟಿ
ಲೊದಗಿತಿಬ್ಬರ ಬೊಬ್ಬೆ ಭುವನವ
ಬೆದರಿಸಿತು ಪದಘಟ್ಟಣೆಯ ಘಟ್ಟಣೆಯ ಘಾತಿಯಲಿ
ಆದಿರಿತಿಳೆ ಮಝ ಭಾಪು ಭಟರೆಂ
ದೊದರಿತಾ ಪರಿವಾರದಬ್ಬರ
ತ್ರಿದಶನಿಕರದ ಸಾಧುರವವಂಜಿಸಿತು ಮೂಜಗವ ೪

ಬೆರಳ ತೂಗಿದನಡಿಗಡಿಗೆ ಹಲ
ಧರನುದಗ್ರಗದಾ ವಿಧಾನಕೆ
ಶಿರವನೊಲೆದನು ಶೌರಿ ಮಿಗೆ ಮೆಚ್ಚಿದನು ಯಮಸೂನು
ವರ ಗದಾಯುಧ ವಿವಿಧ ಸತ್ವಕೆ
ಪರಮಜೀವವಿದೆಂದನರ್ಜುನ
ನರರೆ ಮಝರೇ ರಾವು ಜಾಗೆಂದುದು ಭಟವ್ರಾತ ೫

ತಿವಿದನವನಿಪನನಿಲತನುಜನ
ಕವಚ ಬಿರಿದುದು ಕಯ್ಯೊಡನೆ ರಣ
ದವಕಿ ಕೈದೋರಿದನು ಕೌರವನೃಪನ ವಕ್ಷದಲಿ
ಸವಗ ಸೀಳಿತು ಮರಳಿ ಹೊಯ್ದನು
ಪವನಜನ ಸೀಸಕದ ವರಮಣಿ
ನಿವಹ ಸಿಡಿದವು ಸಿಡಿಲು ಮೆಟ್ಟಿದ ಮೇರುಗಿರಿಯಂತೆ ೬

ಅಡಿಗಡಿಗೆ ಕರ್ಪುರದ ಕವಳವ
ನಡಸಿದರು ತಾಳಿಗೆಗೆ ಬಳಿಕಡಿ
ಗಡಿಗೆ ಹೆರಸಾರಿದರು ಸಮರಶ್ರಮನಿವಾರಣಕೆ
ಕಡುಹು ತಳಿತುದು ಪೂತು ಫಲವಾ
ಯ್ತಡಿಗಡಿಗೆ ಮಚ್ಚರದ ಮುಸಕದ
ತಡಿಕೆವಲೆ ನುಗ್ಗಾಯ್ತು ಮನ ಕುರುಪತಿಯ ಪವನಜನ ೭

ಶ್ವಾಸದಲಿ ಕಿಡಿಸಹಿತ ಕರ್ಬೊಗೆ
ಸೂಸಿದವು ಕಣ್ಣಾಲಿಗಳು ಕ
ಟ್ಟಾಸುರದಿ ಕೆಂಪೇರಿದವು ಬಿಗುಹೇರಿ ಹುಬ್ಬುಗಳು
ರೋಷ ಮಿಗಲೌಡೊತ್ತಿ ಬಹಳಾ
ಭ್ಯಾಸಿಗಳು ಡಾವರಿಸಿದರು ಡೊ
ಳ್ಳಾಸವೋ ರಿಪುಸೇನೆ ಕಾಣದು ಚಿತ್ರಪಯುಗತಿಯ ೮

ಹೊಕ್ಕು ಕುರುಪತಿ ಭೀಮಸೇನನ
ನಿಕ್ಕಿದನು ಕಂದದಲಿ ಗದೆಯುನು
ಸೆಕ್ಕಿದನು ವಾಮಾಂಗದಲಿ ಪವಮಾನನಂದನನ
ಜಕ್ಕುಲಿಸಿದವೊಲಾಯ್ತು ಜರೆದು ನ
ಭಕ್ಕೆ ಪುಟನೆಗೆದನಿಲಜನ ಸೀ
ಸಕ್ಕೆ ಹೊಯ್ದಾರಿದನು ಕೌರವನೃಪತಿ ಖಾತಿಯಲಿ ೯

ಬಾಯೊಳೊಕ್ಕುದು ರುಧಿರ ಕಂಗಳ
ದಾಯ ತಪ್ಪಿತು ಡೆಂಢಣಿಸಿ ಕಲಿ
ವಾಯುಸಂತನಪ್ಪಳಿಸಿ ಬಿದ್ದನು ಕಯ್ಯ ಗದೆ ಕಳಚಿ
ಹಾಯೆನುತ ತನ್ನವರು ಭಯದಲಿ
ಬಾಯ ಬಿಡೆ ನಿಮಿಷಾರ್ಧದಲಿ ನಿರ
ಪಾಯನೆದ್ದನು ನೋಡಿದನು ಚೇತರಿಸಿ ಕೆಲಬಲನ ೧೦

ಹೆದರು ಹಿಂಗಿತು ನೆಲಕೆ ಮಾರು
ದ್ದಿದನು ಕರವನು ಸೂಸಿ ಹಾರಿದ
ಗದೆಯ ಕೊಂಡನು ಸೆರಗಿನಲಿ ಸಂತೈಸಿ ಶೋಣಿತವ
ಅದಿರೆ ನೆಲನವ್ವಳಿಸಿ ಮೇಲ್ವಾ
ಯಿದನ ಹೊಳಹಿನ ಹೊಯ್ಲ ಹೊದ
ರೆದ್ದುದು ವಿಭಾಡಿಸಿ ಭೀಮ ಹೊಯ್ದನು ನೃಪನ ಮಸ್ತಕವ ೧೧

ದೂಟಿ ಬಿದ್ದವು ಸೀಸಕವು ಶತ
ಕೋಟಿ ಘಾಯದ ಘಟನೆಯೊಳು ಶತ
ಕೋಟಿ ಘಾಯಕೆ ಸಿಡಿದ ಹೇಮಾಚಳದ ತುದಿಯಂತೆ
ತಾಟಿತಸು ಕಂಠದಲುಸುರ ಪರಿ
ಪಾಟಿ ತಪ್ಪಿತು ಮೃತ್ಯುವಿನ ದರ
ಚೀಟಿ ಹಿಡಿದನೊ ಹೇಳೆನಲು ಮಲಗಿದನು ಮೈಮರೆದು ೧೨

ಹಾರಿತೊಂದೆಸೆಗಾಗಿ ಗದೆ ಮುರಿ
ದೇರಿದವು ಕಣ್ಣಾಲಿ ನೆತ್ತಿಯ
ಜೋರು ಮುಸುಂಕಿತು ಮುಖವನೊಂದು ವಿಘಳಿಗೆ ಮಾತ್ರದಲಿ
ಜಾರಿತಂತಸ್ಸಿಮಿತ ಭಯ ಹುರಿ
ಯೇರಿತಧಿಕಕ್ರೋಧ ಕರಣದ
ತಾರುಥಟ್ಟಡಗಿದುದಪಸರಿಸಿತಸು ನಿಜಾಂಗದಲಿ ೧೩

ನಿಮಿಷದಲಿ ಕಂದೆರೆದನಂತಃ
ಶ್ರಮದ ಝಳವಡಗಿತು ವಿಪಕ್ಷ
ಭ್ರಮಣಚೇತೋಭಾವ ಭವನದ ಮುಖವಿಕಾಸದಲಿ
ತಮದ ತನಿಮುಸಕದಲಿ ಭುಜವಿ
ಕ್ರಮ ಛಡಾಳಿಸಲೆದ್ದು ಭೂಪೋ
ತ್ತಮನು ಕೊಂಡನು ಗದೆಯನನುವಾಗೆಂದನನಿಲಜನ ೧೪

ಈಗಳನುವಾದೆನೆ ಧರಿತ್ರಿಯ
ಭಾಗವನು ಬೇಡಿದಡೆ ನೀ ಮುರಿ
ದಾಗಳನುವಾದುದು ಕಣಾ ಗದೆ ನಿನ್ನ ಕಿರುದೊಡೆಗೆ
ತಾಗಿ ನೋಡಿನ್ನೊಮ್ಮೆನುತ ಮೈ
ಲಾಗಿನಲಿ ಹೊಳೆಹೊಳೆದು ಕೈದುವ
ತೂಗಿ ತುಡುಕಿದನರಸನನು ಬೊಬ್ಬಿರಿದು ಕಲಿ ಭೀಮ ೧೫

ಉಬ್ಬಬೇಡೆಲೆ ಭೀಮ ಗದೆಯೋ
ಬೊಬ್ಬೆಯೋ ಬಲುಗೈದು ನಿನ್ನಯ
ಗರ್ಭಗಿರಿಗಿದೆ ಸಿಡಿಲೆನುತ ಹೊಯ್ದನು ವೃಕೋದರನ
ತುಂಬಿದನು ಗದೆಯಿಂದ ಘಾಡಿಸಿ
ಹಬ್ಬಿದನು ಕೆಲಬಲಕೆ ಖತಿಯಲಿ
ಕೊಬ್ಬಿದರೆವೊಯ್ಲುಗಳ ದನಿ ಕಿವಿಗೆಡಿಸೆ ಮೂಜಗವ ೧೬

ಧರಣಿಪತಿ ಕೇಳ್ ಭೀಮಸೇನನ
ಧರಧುರದ ಹೊಯ್ಲುಗಳ ಗದೆಯಲಿ
ಹೊರಳಿಗಿಡಿ ಝೊಂಪಿಸಿದುವುರು ಖದ್ಯೋತ ಮಂಡಲವ
ಅರಸನೆರಗಿದಡನಿಲಸುತ ಪೈ
ಸರಿಸಿ ಕಳಚಿದನಾ ಕ್ಷಣದೊಳ
ಬ್ಬರಿಸಿ ಹೊಯ್ದನು ಭೀಮ ಕೌರವನೃಪನ ಕಂಧರವ ೧೭

ನೋಡಿದನು ದಂಡೆಯಲಿ ಲಾಗಿಸಿ
ಹೂಡಿದನು ನೃಪ ಭೀಮನಲಿ ಪಯ
ಪಾಡಿನಲಿ ಪಲ್ಲಟಿಸಿದನು ಪಡಿತಳಕೆ ಕುರುರಾಯ
ಘಾಡಿಸಿದನುಪ್ಪರದ ಘಾಯಕೆ
ಕೂಡೆ ತಗ್ಗಿದನನಿಲಸುತ ಖಯ
ಖೋಡಿಯಿಲ್ಲದೆ ಭಟರು ಹೊಯ್ದಾಡಿದರು ಖಾತಿಯಲಿ ೧೮

ತೊಲಗಿ ನಿಂದರು ಮತ್ತೆ ಭಾರಿಯ
ಬಳಲಿಕೆಯ ಬೇಳುವೆಯ ಚಿತ್ತ
ಸ್ಖಲಿತರಂಗೀಕರಿಸಿದರು ಕರ್ಪುರದ ವೀಳೆಯವ
ಘಳಿಲನೆದ್ದರು ನಿಮಿಷಮಾತ್ರಕೆ
ಮಲೆತು ನಿಂದರು ಘಾಯಘಾತಿಯ
ಸುಳಿವನವಧಾನಿಸುತ ತೂಗಿದರಾಯುಧದ್ವಯವ ೧೯

ಲಾಗಿಸುಂತ ಲಳಿಯೆದ್ದು ಭೀಮನ
ತಾಗಿಸಿದನವನೀಶನಾತನ
ಭಾಗಧೇಯವನೇನನೆಂಬೆನು ಹೊಯ್ಲು ಹೊರಗಾಯ್ತು
ಬೇಗುದಿಯಲುಬ್ಬೆದ್ದು ನೃಪತಿ ವಿ
ಭಾಗಿಸಿದನನಿಲಜನ ತನುವನು
ಬೇಗದಲಿ ಕಳಚಿದನು ಪವನಜ ಪಯದ ಬವರಿಯಲಿ ೨೦

ತಪ್ಪಿಸಿದನೇ ಘಾಯವನು ಫಡ
ತಪ್ಪಿಸಿನ್ನಾದಡೆಯೆನುತ ಕಡು
ದರ್ಪದಲಿ ಹೊಯ್ದನು ಸಮೀರಾತ್ಮಜನನವನೀಶ
ತಪ್ಪಿತದು ಗದೆ ತನುವ ರಕುತದ
ದರ್ಪಣದ ರಹಿಯಾಯ್ತು ಗದೆ ಮಾ
ರಪ್ಪಿತರಸನನೆನಲು ಹೊಯ್ದನು ಭಾಳದಲಿ ಭೀಮ ೨೧

ವಟ್ಟಿ ಮುರಿದುದು ಸೀಸಕದ ಗದೆ
ನಟ್ಟುದರಸನ ನೊಸಲ ರುಧಿರದ
ಕಟ್ಟೆಯೊಡೆದಂದದಲಿ ಕವಿದುದು ನೃಪನ ತನು ನನೆಯೆ
ಕೊಟ್ಟ ಘಾಯಕೆ ಬಳಲಿ ಮರವೆಗೆ
ಬಿಟ್ಟು ಮನವನು ನಿಮಿಷದಲಿ ಜಗ
ಜಟ್ಟಿ ಕೌರವರಾಯ ಕೊಂಡನು ನಿಜಗದಾಯುಧವ ೨೨

ಘಾಯಗತಿ ಲೇಸಾಯ್ತು ಪೂತುರೆ
ವಾಯುಸುಂತ ದಿಟ ಸೈರಿಸೆನ್ನಯ
ಘಾಯವನು ಘೋರಪ್ರಹಾರಸಹಿಷ್ಣು ಗಡ ನೀನು
ಕಾಯಲಾಪಡೆ ಫಲುಗುಣನನಬು
ಜಾಯತಾಕ್ಷನ ಕರೆಯೆನುತ ಕುರು
ರಾಯನೆರಗಿದನನಿಲಜನ ಕರ್ಣಪ್ರದೇಶದಲಿ ೨೩

ಎಡದ ದಂಡೆಯೊಳೊತ್ತಿ ಹೊಯ್ಲಗಳ
ಕಡುಹ ತಪ್ಪಿಸಿ ಕೌರವೇಂದ್ರನ
ಮುಡುಹ ಹೊಯ್ದನು ಭೀಮ ಮಝ ಭಾಪೆನೆ ಸುರ ಸ್ತೋಮ
ತಡೆದನಾ ಘಾಯವನು ಗದೆಯಲಿ
ನಡುವನಪ್ಪಳಿಸಿದನು ಭೀಮನ
ಮಿಡುಕು ನಿಂದುದು ನಗುವ ಪಾಂಡವ ಬಲದ ತಲೆವೊಣೆಯ ೨೪

ಒಲೆದು ಬಿದ್ದನು ಭೀಮ ಕುಲಗಿರಿ
ಮಲಗುವಂದದಲೇರಬಾಯಿಂ
ದಿಳಿವ ಶೋಣಿತಧಾರೆ ಮಗ್ಗುಲ ಮುಸುಂಕಿತವನಿಯಲಿ
ಎಲೆ ಮಹಾದೇವಾ ವೃಕೋದರ
ನಳಿದನೇ ಹಾ ಭೀಮ ಹಾಯೆಂ
ದಳಲಿದುದು ಪರಿವಾರ ಸಾತ್ಯಕಿ ಸೃಂಜಯಾದಿಗಳು ೨೫

ಮೈಮರೆದನರೆಗಳಿಗೆ ಮಾತ್ರಕೆ
ವೈಮನಸ್ಯದ ಜಾಡ್ಯರೇಖೆಯ
ಸುಯ್ ಮಹಾದ್ಭುತವಾಯ್ತು ಪರಿಣತ ಪಾರವಶ್ಯದಲಿ
ಹಾ ಮಹಾದೇವೆನುತ ಹಗೆವನ
ಕೈಮೆಯನು ಬಣ್ಣಿಸುತಲೆದ್ದನ
ಲೈ ಮರುತ್ಸುತ ಸೂಸಿ ಹಾರಿದ ಗದೆಯ ತಡವರಿಸಿ ೨೬

ಕಾದುಕೊಳು ಕೌರವ ಗದಾಸಂ
ಭೇದದಭ್ಯಾಸಿಗಳಿಗಿದೆ ದು
ರ್ಭೇದ ನೋಡಾ ಹೊಯ್ಲಿಗಿದು ಮರೆವೊಗು ಮಹೇಶ್ವರನ
ಹೋದೆ ಹೋಗಿನ್ನೆನುತ ಜಡಿದು ವಿ
ಷಾದಭರದಲಿ ಮುಂದುಗಾಣದೆ
ಕೈದಣಿಯಲಪ್ಪಳಿಸಿದನು ಕಲಿಭೀಮ ಕುರುಪತಿಯ ೨೭

ಹಾರಿತೊಂದೆಸೆಗಾಗಿ ಗದೆ ಮೈ
ಹೇರಿತುರು ಘಾಯವನು ಮೊಳಕಾ
ಲೂರಿ ಬಿದ್ದನು ವದನದಲಿ ಮೆತಣಿಸೆ ರಣಧೂಳಿ
ಕಾರಿದನು ರಕುತವನು ಕೌರವ
ನೇರು ಬಲುಹೋ ಹೋದನೆನುತವೆ
ಚೀರಿತಾ ಪರಿವಾರ ಸುಮ್ಮಾನದ ಸಘಾಡದಲಿ ೨೮

ಭಾಪು ಮಝರೇ ಭೀಮ ಕೌರವ
ಭೂಪವಿಲಯಕೃತಾಂತ ಕುರುಕುಲ
ದೀಪಚಂಡಸಮೀರ ಕುರುನೃಪತಿಮಿರಮಾರ್ತಾಂಡ
ಕೋಪನಪ್ರತಿಪಕ್ಷಕುಲನಿ
ರ್ವಾಪಣೈಕಸಮರ್ಥ ಎನುತಭಿ
ರೂಪನನು ಹೊಗಳಿದರು ವಂದಿಗಳಬುಧಿ ಘೋಷದಲಿ ೨೯

ಜಾಳಿಸಿದ ವೇದನೆಯ ಝೊಮ್ಮಿನ
ಜಾಳಿಗೆಯ ಜವ ಹರಿದುದೆಚ್ಚರ
ಮೇಲುಮರವೆಯ ಮುಸುಕು ಜಾರಿತು ಹಾರಿತತಿಭೀತಿ
ಬೇಳುವೆಯ ಕರಣೇಂದಿಯದ ಮೈ
ಹಾಳಿ ನಿಂದುದು ಬಿಗಿದ ಬಳಲಿಕೆ
ಯೊಳಿಗದ ಮೊನೆ ಮುರಿಯೆ ಸಂತೈಸಿದನು ಕುರುರಾಯ ೩೦

ಒರೆವ ರಕುತವ ಧೂಳಿನಿಂದವೆ
ಹೊರಗ ತೊಡೆತೊಡೆದೌಕಿ ಕೋಪದ
ಹೊರಿಗೆ ಝಳಪಿಸೆ ಕಂಗಳಲಿ ಹುಬ್ಬಿನಲಿ ಸುಯ್ಲಿನಲಿ
ಮುರುಕಿಸುವ ರಿಪುಭಟನನೋರೆಯೊ
ಳೆರಗಿ ನೋಡುತ ಸಾರಸತ್ವದ
ನೆರವಣಿಗೆ ಕೈಗೂಡಲೆದ್ದನು ಗದೆಯ ಕೈನೀಡಿ ೩೧

ಹಾನಿಯೆಮಗಾಯ್ತೆಂದು ಕಡುಸು
ಮ್ಮಾನವುಕ್ಕಿತೆ ನಿಮಿಷದಲಿ ದು
ಮ್ಮಾನ ಶರಧಿಯೊಳದ್ದುವೆನು ತಿದ್ದುವೆನು ನಿನ್ನವರ
ಈ ನಗೆಯನೀ ಬಗೆಯನೀ ವಿಜ
ಯಾನುರಾಗವ ನಿಲಿಸುವೆನು ಯಮ
ಸೂನು ಸೈರಿಸೆನುತ್ತ ಜರೆದನು ವಾಮಹಸ್ತದಲಿ ೩೨

ಎಲವೊ ಭೀಮ ವಿಘಾತಿಗಳ ಕೈ
ದೊಳಸಿನಲಿ ತೆರಹಾಯ್ತು ನೀನಿ
ಟ್ಟೆಳಿಸುವಡೆ ನಿನಗಾದುದಾಕಸ್ಮಿಕವದಭ್ಯುದಯ
ಛಲವ ಬಿಡಿಸುವಡೇಳ ನೀ ಮನ
ವಳಕುವಡೆ ನಿನ್ನವರ ಕರೆ ಹೊ
ಯ್ಲೊಳಗಿದೊಂದೇ ಹೊಯ್ಲೆನುತ ಹೊಕ್ಕನು ಮಹೀಪಾಲ ೩೩

ಹೊಯ್ದು ತೋರಾ ಬಂಜೆ ನುಡಿಯಲಿ
ಬಯ್ದಡಧಿಕನೆ ಬಾಹುವಿಂ ಹೊರ
ಹೊಯ್ದುವನೊ ಮೇಣ್ ಮುಖದಲೊ ನೀನಾರು ಜಾತಿಯಲಿ
ಕಯ್ದು ನಿನಗಿದೆ ಲಕ್ಷ್ಯಪಣ ನಮ
ಗೆಯ್ದುವಡೆ ಗುಪ್ತಪ್ರತಾಪವ
ನೆಯ್ದೆ ಪ್ರಕಟಿಸೆನುತ್ತ ತಿವಿದನು ಭೀಮ ಕುರುಪತಿಯ ೩೪

ಅವನಿಪತಿ ಕೇಳ್ ಭೀಮಸೇನನ
ತಿವಿಗಳನು ತಪ್ಪಿಸಿ ಸುಯೋಧನ
ಕವಿದು ನಾಭಿಗೆ ತೋರಿ ಜಂಘೆಗೆ ಹೂಡಿ ಝಳಪದಲಿ
ಲವಣಿಯಲಿ ಲಳಿಯೆದ್ದು ಹೊಯ್ದನು
ಪವನಜನ ಭುಜಶಿರವ ಶಿಸೀಸಕ
ಕವಚವಜಿಗಿಜಿಯಾಗೆ ಬೀಳೆನುತರಸ ಬೊಬ್ಬಿರಿದ ೩೫

ಮತ್ತೆ ಹೊಯ್ದನು ಭೀಮಸೇನನ
ನೆತ್ತಿಯನು ನಿಪ್ಪಸರದಲಿ ಕಳೆ
ಹತ್ತಿ ಝೋಂಪಿಸಿ ತಿರುಗಿ ಬಿದ್ದನು ಬಿಗಿದ ಮೂರ್ಛೆಯಲಿ
ಕೆತ್ತ ಕಂಗಳ ಸುಯ್ಲ ಲಹರಿಯ
ಸುತ್ತಲೊಗುವರುಣಾಂಬುಗಳ ಕೆಲ
ದತ್ತ ಸಿಡಿದಿಹ ಗದೆಯ ಭಟನೊರಗಿದನು ಮರವೆಯಲಿ ೩೬

ಮಡಿದವನ ಹೊಯ್ಕೈನು ಧನಂಜಯ
ತೊಡು ಮಹಾಸ್ತ್ರವನವನಿಪತಿ ಬಿಲು
ದುಡುಕು ಯಮಳರು ಕೈದುಗೊಳಿ ಸಾತ್ಯಕಿ ಶರಾಸನವ
ಹಿಡಿ ಶಿಖಂಡಿ ದ್ರುಪದಸುತರವ
ಗಡಿಸಿರೈ ನಿಮ್ಮವನ ಹರಿಬಕೆ
ಮಿಡುಕುವಡೆ ಬಹುದೆನುತ ತೂಗಿದನವನಿಪತಿ ಗದೆಯ ೩೭

ಮೇಲೆ ಕಳವಳವಾಯ್ತು ದಿಕ್ಕಿನ
ಮೂಲೆ ಬಿರಿಯೆ ಪಿಶಾಚರಾಕ್ಷಸ
ಜಾಲ ವಿದ್ಯಾಧರ ಮಹೋರಗ ಯಕ್ಷ ಕಿನ್ನರರು
ಆಳು ನೀನಹೆ ನಳ ನಹುಷ ಭೂ
ಪಾಲಕುಲದಲಭಂಗನಾದೆ ಕ
ರಾಳಭುಜಬಲ ನೀನೆನುತ ಕೊಂಡಾಡಿತಮರಗಣ ೩೮

ಅರಸ ಕೇಳಾಶ್ಚರಿಯವನು ನಿ
ಮ್ಮರಸನಾಹವ ಸಫಲ ಸುರಕುಲ
ವರಳ ಮಳೆಗರೆದುದು ಕಣಾ ಕುರುಪತಿಯ ಸಿರಿಮುಡಿಗೆ
ಅರಿನೃಪರು ತಲೆಗುತ್ತಿದರು ಮುರ
ಹರ ಯುಧಿಷ್ಠಿರ ಪಾರ್ಥ ಯಮಳರು
ಬೆರಳ ಮೂಗಿನಲಿದ್ದು ಸುಯ್ದರು ಬಯ್ದು ದುಷ್ಕೃತವ ೩೯

ಮಿಡಿದನರ್ಜುನ ಧನುವ ಯಮಳರು
ತುಡುಕಿದರು ಕಯ್ದುಗಳ ಸಾತ್ಯಕಿ
ಮಿಡುಕಿದನು ಮರುಗಿದರು ಪಂಚದ್ರೌಪದೀಸುತರು
ಒಡೆಯನಳಿವಿನಲೆಲ್ಲಿಯದು ನೃಪ
ನುಡಿದ ನುಡಿಯೆನುತನಿಲತನುಜನ
ಪಡೆ ಗಜಾಶ್ವವ ಬಿಗಿಯೆ ಗಜಬಜಿಸಿತು ಭಟಸ್ತೋಮ ೪೦

ದುಗುಡದಲಿ ಹರಿ ರೌಹಿಣೇಯನ
ಮೊಗವ ನೋಡಿದಡಾತನಿದು ಕಾ
ಳೆಗವಲೇ ಕೃತಸಮಯರಾದಿರಿ ಪೂರ್ವಕಾಲದಲಿ
ಹಗೆಯ ಬಿಡಿ ಕುರುಪತಿಯ ಸಂಧಿಗೆ
ಸೊಗಸಿ ನಿಲಲಿ ಯುಧಿಷ್ಠಿರನ ಮಾ
ತುಗಳ ಕೆಡಿಸದಿರೆಂದನಾ ಕೃಷ್ಣಂಗೆ ಬಲರಾಮ ೪೧

ಅರಸ ಕೇಳೈ ಬಿದ್ದ ಭೀಮನ
ಹೊರೆಗೆ ಬಂದರ್ಜುನನು ಮೋರೆಗೆ
ಬೆರಳನೊಡ್ಡಿ ಸಮೀರನಂದನನುಸುರನಾರೈದು
ಮರಳಿದನು ಮುರಹರನನೆಕ್ಕಟಿ
ಗರೆದು ಸಪ್ರಾಣನು ಗದಾನಿ
ರ್ಭರಪರಿಶ್ರಮ ಭೀಮ ಬಳಲಿದನೆಂದನಾ ಪಾರ್ಥ ೪೨

ದೇವ ಬೆಸಸಿನ್ನನಿಲಸೂನು ಸ
ಜೀವನಹಿತನಿಬರ್ಹಣ ಪ್ರ
ಸ್ತಾವವನು ಕರುಣಿಸುವುದಾತನ ಧರ್ಮವಿಕೃತಿಗಳ
ನೀವು ಕಂಡಿರೆ ನಾಭಿ ಜಂಘೆಗೆ
ಡಾವರಿಸಿದನು ಹಲವು ಬಾರಿ ಜ
ಯಾವಲಂಬನವೆಂತು ಕೃಪೆಮಾಡೆಂದನಾ ಪಾರ್ಥ ೪೩

ನೀವು ಮೊದಲಲಿ ಬೆಸಸಿದಿರಿ ಮಾ
ಯಾವಿಗಳ ಮಾಯೆಯಲಿ ಗೆಲುವುದು
ದೈವಕೃತಿಯಿದು ರಾಜಮಂತ್ರದ ಸಾರತರವೆಂದು
ಈ ವಿರೋಧಿಯ ಧರ್ಮಗತಿ ಸಂ
ಭಾವವನು ಕರ್ತವ್ಯಭಾವವ
ನೀವು ಬಲ್ಲಿರಿಯೆಂದನರ್ಜುನದೇವ ವಿನಯದಲಿ ೪೪

ಧಾತುಗೆಟ್ಟನು ಭೀಮ ಮುಸುಕಿತು
ಭೀತಿ ನಮ್ಮೆಲ್ಲರನು ದೈವ
ವ್ರಾತವಾತನ ಕೊಂಡು ಕೊನರಿತು ಹೊಯ್ದು ಹೂಮಳೆಯು
ಪಾತಕಕೆ ಪಡವಾಗದಮಳ
ಖ್ಯಾತಿ ನೋಯದೆ ವಿಜಯಸಿರಿ ರಾ
ಗಾತಿಶಯದಲಿ ನಮ್ಮ ರಮಿಸುವ ದೆಸೆಯ ಬೆಸಸೆಂದ ೪೫

ಅನಿಲಸುತ ಸಪ್ರಾಣಿಸಲಿ ರಿಪು
ಜನಪನೂರುವಿಭಂಗವೇ ಮುಂ
ನ್ನಿನ ಪ್ರತಿಜ್ಞೆಯಲಾ ಸಭಾಮಧ್ಯದಲಿ ಕುರುಪತಿಯ
ನೆನಸಿಕೊಡಿ ಸಾಕಿನ್ನು ಬೇರೊಂ
ದನುನಯವು ತಾನೇನು ವಿಜಯಾಂ
ಗನೆಗೆ ದ್ರುಪದಕುಮಾರಿ ತಪ್ಪದೆ ಸವತಿಯಹಳೆಂದ ೪೬

ಅರಸ ಕೇಳಾಕ್ಷಣದೊಳನಿಲ
ಸ್ಮರಣೆಯನು ಹರಿ ಮಾಡಿದನು ಸಂ
ಚರಿಸಿದನು ತತ್ತನುಜನಂಗೋಪಾಂಗವೀಥಿಯಲಿ
ತರತರದ ನಾಡಿಗಳೊಳಗೆ ವಿ
ಸ್ತರಿಸಿ ಮೂಲಾಧಾರದಲಿ ಚೇ
ತರಿಸಿ ಸರ್ವಾಂಗದಲಿ ಜೀವಸಮೀರ ಪಸರಿಸಿದ ೪೭

ತ್ರಾಣವಿಮ್ಮಡಿಯಾಯ್ತು ತಿರುಗಿದ
ಗೋಣು ಮರಳಿತು ರೋಷವಹ್ನಿಗೆ
ಸಾಣೆವಿಡಿದವೊಲಾಯ್ತು ಕಣ್ಣುಗುಳಿದುವು ಕೇಸುರಿಯ
ಠಾಣವೆಡಹಿದ ಗದೆಯ ರಣಬಿ
ನ್ನಾಣ ಮಸುಳಿದ ಮಾನಮರ್ದನ
ದೂಣೆಯದ ಸವ್ಯಥೆಯ ಭಟ ಸಂತೈಸಿದನು ತನುವ ೪೮

ಕೊಡಹಿದನು ತನುಧೂಳಿಯನು ಧಾ
ರಿಡುವ ರುಧಿರವ ಸೆರಗಿನಲಿ ಸಲೆ
ತೊಡೆತೊಡೆದು ಕರ್ಪುರದ ಕವಳವನಣಲೊಳಳವಡಿಸಿ
ತೊಡೆಯ ಹೊಯ್ದಾರುವ ಮುರಾರಿಯ
ನೆಡೆಯುಡುಗದೀಕ್ಷಿಸುತ ದೂರಕೆ
ಸಿಡಿದ ಗದೆಯನು ತುಡುಕಿ ನೃಪತಿಯ ತೊಡೆಗೆ ಲಾಗಿಸಿದ ೪೯

ಭಾಷೆಗಳುಪರು ಪಾಂಡುಸುತರೆಂ
ಬಾಸೆಯಲಿ ನಿನ್ನಾತ ವೈಮರೆ
ದೋಸರಿಸದಿದಿರಾದನೂರುದ್ವಯವ ವಂಚಿಸದೆ
ಶ್ವಾಸ ಮರಳಿತೆ ನಿನಗೆ ಯೋಗಾ
ಭ್ಯಾಸಿಯಹೆಯೋ ಭೀಮ ಸೈರಣೆ
ಲೇಸು ಮೆಚ್ಚಿದೆನೆನುತ ನೃಪನೆರಗಿದನು ಪವನಜನ ೫೦

ಹೊಯ್ದು ಲಳಿಯಲಿ ಕರಣಗತಿಯಲಿ
ಹಾಯ್ದು ನಭಕುಪ್ಪರಿಸಿ ಮರಳಿದು
ಹೊಯ್ದು ಹಿಂಗುವ ನೃಪನ ತೊಡೆಗಳನಿಟ್ಟನಾ ಭೀಮ
ಹಾಯ್ದು ಗದೆ ಹೆದ್ದೊಡೆಗಳನು ಮುರಿ
ದಯ್ದಿ ತವನಿಯನರುಣಜಲದಲಿ
ತೊಯ್ದು ಧೊಪ್ಪನೆ ಕೆಡೆದನಿಳೆಯಲಿ ಕೌರವರ ರಾಯ ೫೧

ಹಾರ ರುರಿದುದು ಕರ್ಣಪೂರದ
ಚಾರು ಮೌಕ್ತಿಕನಿಕರ ಸಿಡಿದವು
ಧಾರಿಡುವ ರಕುತಾಂಬು ಮಡುಗಟ್ಟಿದುದು ಮಗ್ಗುಲಲಿ
ವೀರ ಭೀಮಾ ಮಝ ಎನುತ ಬಲ
ವಾರಿದುದು ನಿಸ್ಸಾಳ ಸೂಳಿನ
ವೀರಪಣಹದ ಲಗ್ಗೆ ಮಸಗಿತು ಪರರ ಥಟ್ಟಿನಲಿ ೫೨

ಬಿದ್ದನೈ ನಿನ್ನಾತನಿನ್ನೇ
ನೆದ್ದರೈ ದಾಯಿಗರು ಜೂಜನು
ಗೆದ್ದುದಕೆ ಫಲ ಬಂದುದೇ ಸಂಧಾನದಲಿ ಛಲವ
ಹೊದ್ದಿತಕೆ ಹುಲಿಸಾಯ್ತು ಬಲುಮಗೆ
ಬಿದ್ದನೆಂದುಳುಹಿದನೆ ಪವನಜ
ನುದ್ದುರುಟುತನಕೇನನೆಂಬೆನು ಭೂಪ ಕೇಳೆಂದ ೫೩

ಏಕೆ ಸಂಜಯ ಕೌರವೇಂದ್ರನ
ಸಾಕಿತಕೆ ಫಲವಾಯ್ತು ನೀ ಬರಿ
ದೇಕೆ ಚುಚ್ಚುವೆ ಕಾಸಿ ಬಾದಣಗೊರೆದ ಘಾಯದಲಿ
ನೂಕಿದರೆ ಬಲಭದ್ರನನು ಮೇ
ಲೇಕೆ ಪವನಜ ಮುನಿದನವರ
ವ್ಯಾಕುಳರಲೇ ವೀರನಾರಾಯಣನ ಕರುಣದಲಿ ೫೪

ಎಂಟನೆಯ ಸಂಧಿ

ಸೂ. ಕೆಡೆದ ಕೌರವನೃಪನ ನೇಮವ
ಪಡೆದು ಕೃಪ ಕೃತವರ್ಮ ಗುರುಸುತ
ರೊಡನೆ ಬಂದರು ಸಾರಿದರು ಪಾಂಡವರ ಪಾಳೆಯವ

ಕೇಳು ಧೃತರಾಷ್ಟ್ರಾವನೀಶ ಕ
ರಾಳ ಲೋಹಗದಾಭಿಹತಿಗೆ ನೃ
ಪಾಲ ಬಿದ್ದನು ಭಾರತದ ದುಸ್ಸಂಗ ಭಂಗದಲಿ
ಮೇಲೆ ಚಾರಣ ಸೂತ ಮಾಗಧ
ಜಾಲ ಹೊಗಳಿತು ಗರುವ ಕುರುಭೂ
ಪಾಲ ಗಂಡಿಗನಕಟೆನುತ ಕೊಂಡಾಡಿತಮರಗಣ ೧

ಏನನೆಂಬೆನು ಜೀಯ ಮಹಿಯಂಲಿ
ಮಾನನಿಧಿ ಮಲಗಿದನಲೈ ತವ
ಸೂನು ರುಧಿರದ ತಿಲಕವಾದನಲೈ ಧರಾಂಗನೆಗೆ
ಭಾನುಮತಿ ವೈಧವ್ಯವಿಧಿಗಿ
ನ್ನೇನ ನೋಂತಳೊ ರಾಜರವಿಯಂವ
ಸಾನಸಮಯದೊಳಾದುದದ್ಭುತವರಸ ಕೇಳೆಂದ ೨

ನಡುಗಿತಿಳೆ ನಿರ್ಘಾತದಲಿ ಬರ
ಸಿಡಿಲು ಸುಳಿದುದು ನೆಣನ ಬಸೆಸಹಿ
ತಡಗು ಸುರಿದವು ಕದಡಿ ಹರಿದುದು ರಕುತದರೆವೊನಲು
ಸಿಡಿದವರೆಗಳು ಕೆರೆಗಳುಕ್ಕಿದ
ವಡಿಗಡಿಗೆ ಹೆಮ್ಮರ ನಿವಾತದ
ಲುಡಿದು ಬಿದ್ದವು ಕೌರವೇಂದ್ರನ ಪತನ ಕಾಲದಲಿ ೩

ಬೀಸಿದುದು ಬಿರುಗಾಳಿ ಕತ್ತಲೆ
ಸೂಸಿದುದು ದಿಗುವಳಯದಲಿ ಪರಿ
ವೇಷದಲಿ ಗ್ರಹ ನೆರೆದವೈದಾರೇಳು ರವಿಯೊಡನೆ
ಸೂಸಿದವು ಹಗಲುಳುಕು ಮೃಗಗಣ
ವಾಸುರದಲೊದರಿದವು ಕಂದಿತು
ವಾಸರಪ್ರಭೆ ಕೌರವೇಂದ್ರನ ಪತನ ಕಾಲದಲಿ ೪

ಒರೆ ಸಹಿತ ಕಯ್ದುಗಳು ಕರದಿಂ
ಮುರಿದು ಬಿದ್ದವು ಗಜಹಯದ ಕ
ಣ್ಣೊರತೆಯೆದ್ದವು ಕಡಿದು ಬಿದ್ದವು ಧ್ವಜಪತಾಕೆಗಳು
ತುರುಗಿದಂತಸ್ತಾಪದಲಿ ಮನ
ಮರುಗಿತಾ ಪರಿವಾರ ಸುಭಟರಿ
ಗರುಹಿತಾಕಸ್ಮಿಕದ ಭಯವವನೀಶ ಕೇಳೆಂದ ೫

ದ್ರುಪದತನುಜ ಶಿಖಂಡಿ ಸೃಂಜಯ
ನೃಪ ಯುಧಾಮನ್ಯೂತ್ತಮೌಂಜಸ
ಚಪಳಪಂಚದ್ರೌಪದೀಸುತ ಸೋಮಕಾದಿಗಳು
ಅಪದಶಾವಿರ್ಭೂತಚೇತಃ
ಕೃಪಣರತಿಚಿಂತಿಸಿದರಂದಿರು
ಳುಪಹತಿಯ ಸೂಚಿಸುವ ವಾಮಭುಜಾಕ್ಷಿಕಂಪದಲಿ ೬

ಅವನಿಪತಿ ಕೇಳೀಚೆಯಲಿ ಕೌ
ರವನ ಹೊರೆಗೈತಂದು ನಿಂದನು
ಸವಡಿಗೈಗದೆಯಣಸುಗಲ್ಲದ ಗಾಢಗರ್ವದಲಿ
ಪವನಸುತ ನುಡಿಸಿದನಲೈ ನಿ
ನ್ನವನನೇನೈ ಭೂಪ ಕೊಡುವೈ
ನವಗೆ ನೆಲನರ್ಧವನು ನಾಚಿಕೆಯೇಕೆ ನುಡಿಯೆಂದ ೭

ಊರ ಬೇಡಿದಡೈದ ನಾವೆರ
ಡೂರುಗಳನೇ ಕೊಂಡೆವೈ ನಿಜ
ಧಾರುಣಿಯ ಕೊಡೆನೆಂದಲೈ ಸೂಚ್ಯಾಗ್ರ ಸಮ್ಮಿತವ
ನಾರಿ ಋತುಮತಿಯೆಂದಡೆಯು ಸುಲಿ
ಸೀರೆಗಳನೆಂಬಗ್ಗಳಿಕೆ ಕಾ
ಸಾರದಲಿ ಕರಗಿತೆ ಸುಯೋಧನ ಎಂದನಾ ಭೀಮ ೮

ಎತ್ತಿ ಕಳೆದೈ ಬನಕೆ ನಾವ್ ನಿ
ಮ್ಮೆತ್ತುಗಳಲೈ ಬೆರಳಲೇಡಿಸಿ
ದೆತ್ತುಗಳ ಕೂಡೇಕೆ ಸರಿನುಡಿ ಸಾರ್ವಭೌಮರಿಗೆ
ಇತ್ತಲೇತಕೆ ಬಿಜಯಮಾಡಿದಿ
ರೊತ್ತದೇ ಕಲುನೆಲನು ಪವಡಿಸಿ
ಮತ್ತೆ ತೊಡೆಗಳ ತಿವಿಯಬೇಕೇ ಎಂದನಾ ಭೀಮ ೯

ಕೃತ್ರಿಮವ ನಿರ್ಮಿಸಿದ ಫಲ ಕೈ
ವರ್ತಿಸಿತೆ ನೀವರಗುಮನೆಯಲಿ
ಹೊತ್ತಿಸಿದ ಫಲ ಬಂದುದೇ ವ್ಯವಧಾನವಾದುದಲೆ
ಬಿತ್ತಿದಿರಿ ವಿಷಬೀಜವನು ನೆರೆ
ದತ್ತ ಫಲ ಕೈಸಾರ್ದುದಾದಡೆ
ಕೆತ್ತುಕೊಂಡಿರಲೇಕೆ ನುಡಿ ತನ್ನಾಣೆ ನುಡಿಯೆಂದ ೧೦

ಸಂದುದೇ ನೀ ಮೆಚ್ಚೆ ಸಭೆಯಲಿ
ಹಿಂದೆ ಮಾಡಿದ ಭಾಷೆ ಕುರುಡನ
ನಂದನರನಿಮ್ಮಡಿಸಿದೈವತ್ತನು ರಣಾಗ್ರದಲಿ
ಕೊಂದು ದುಶ್ಶಾಸನನ ಖಂಡವ
ತಿಂದು ರಕುತವ ಕುಡಿದು ಬಲುಗದೆ
ಯಿಂದ ನಿನ್ನಯ ತೊಡೆಯನುಡಿದೆನೆ ಭೂಪ ಹೇಳೆಂದ ೧೧

ರಾಯನಾಸ್ಥಾನದಲಿ ಖೂಳರ
ರಾಯ ನೀನೇ ಭಂಗಪಡಿಸಿ ನ
ವಾಯಿಯಲಿ ನಿಮ್ಮೂರಿಗೆಮ್ಮವರನು ನೀ ಕರಸಿ
ವಾಯದಲಿ ಜೂಜಾಡಿ ಕಪಟದ
ದಾಯದಲಿ ಸೋಲಿಸಿ ಯುಧಿಷ್ಠಿರ
ರಾಯನರಸಿಯ ಸುಲಿಸಿತಕೆ ಫಲವಾಯ್ತೆ ಹೇಳೆಂದ ೧೨

ಹಳುವದಲಿ ನಾನಾ ಪ್ರಕಾರದ
ಲಳಲಿಸಿದ ಫಲಭೋಗವನು ನೀ
ತಲೆಯಲೇ ಧರಿಸೆನುತ ವಾಮಾಂಘ್ರಿಯನು ಮಕುಟದಲಿ
ಇಳುಹಿದನು ಗೌರ್ಗೌವೆನುತ ಬಿಡ
ದುಲಿದೆಲಾ ಎನುತೊದೆದು ಮಕುಟವ
ಕಳಚಿದನು ಕೀಲಣದ ಮಣಿಗಳು ಕೆದರೆ ದೆಸೆದೆಸೆಗೆ ೧೩

ಹಿಂದಣಪರಾಧವನು ಲೆಕ್ಕಿಸು
ತೊಂದೆರಡು ಮೂರಾಯ್ತು ನಾಲ್ಕೈ
ದೆಂದು ಮೆಟ್ಟಿದನವನಿಪಾಲನ ಮಕುಟಮಸ್ತಕವ
ಇಂದುಮುಖಿಯನು ಬೂತುಗೆಡೆದುದ
ಕೊಂದು ಘಾಯವ ಕೊಳ್ಳೆನುತ ಮಡ
ದಿಂದ ವದನವನೊದೆದು ಹಲುಗಳ ಕಳಚಿದನು ಭೀಮ ೧೪

ಉಚಿತವೆಂದರು ಕೆಲರು ಕೆಲರಿದ
ನುಚಿತವೆಂದರು ಪೂರ್ವಜನ್ಮೋ
ಪಚಿತ ದುಷ್ಕೃತವೈಸಲೇ ಶಿವ ಎಂದು ಕೆಲಕೆಲರು
ಖಚರ ಕಿನ್ನರ ಯಕ್ಷ ನಿರ್ಜರ
ನಿಚಯ ಭೀಮನ ಬೈದು ಕುರುಪತಿ
ಯಚಳ ಬಲವನು ಬಣ್ಣಿಸುತ ಹೊಕ್ಕರು ನಿಜಾಲಯುವ ೧೫

ಭೀಮ ಹಾ ಹಾ ಕಷ್ಟವಿದು ಸಂ
ಗ್ರಾಮಜಯವೇ ಸಾಲದೇ ಕುರು
ಭೂಮಿಪತಿಯಶ್ಲಾಘ್ಯನೇ ಲೋಕೈಕಮಾನ್ಯನಲಾ
ನೀ ಮರುಳಲಾ ಸಾರೆನುತ ತ
ತ್ಸೀಮೆಗೈತಂದನಿಲತನುಜನ
ನಾ ಮಹೀಪತಿ ನೂಕಿ ಸಂತೈಸಿದನು ಕುರುಪತಿಯ ೧೬

ಗುಣನಿಧಿಯನೇಕಾದಶಾಕ್ಷೋ
ಹಿಣಿಯ ಪತಿಯನಶೇಷ ಪಾರ್ಥಿವ
ಮಣಿಮಕುಟ ಕಿರಣೋಪಲಾಲಿತ ಪಾದಪಲ್ಲವನ
ರಣದೊಳನ್ಯಾಯದಲಿ ತೊಡೆಗಳ
ಹಣಿದುದಲ್ಲದೆ ಪಾದದಲಿ ನೀ
ಕೆಣಕುವರೆ ಕುರುರಾಜಮೌಳಿಯನೆಂದನಾ ಭೂಪ ೧೭

ಅನುಜರಳಿದುದು ನೂರು ರಣದಲಿ
ತನುಜರಳಿದುದು ಮಾವ ಗುರು ಮೈ
ದುನ ಪಿತಾಮಹ ಪುತ್ರ ಮಿತ್ರ ಜ್ಞಾತಿ ಬಾಂಧವರು
ಅನಿಬರವನೀಶ್ವರರು ಸಮರಾ
ವನಿಯೊಳಡಗಿದುದೇಕದೇಶದ
ಜನಪತಿಯ ಮುರಿದುದುವೆ ಸಾಲದೆ ಭೀಮ ನಮಗೆಂದ ೧೮

ಆವ ಮೋರೆಯೊಳಪ್ಪದೇವರ
ನಾವು ನೋಡುವೆವಪ್ಪಯರ ಸಂ
ಭಾವಿಸುವೆವಾವಂಗದಲಿ ಗಾಂಧಾರಿ ಕಡುಗೋಪಿ
ದೇವಿಯರುಗಳ ಶೋಕವಹ್ನಿಯ
ನಾವ ವಿಧದಲಿ ನಿಲಿಸುವೆವು ಕಾಂ
ತಾವಳಿಗಳೇನೆಂದು ಬಯ್ಯರು ಭೀಮ ಹೇಳೆಂದ ೧೯

ಅಳಲಿದತಿಭಂಗಿಸಲು ಪರಮಂ
ಡಳಿಕರೇ ನಾವ್ ಪಾಂಡುವಿನ ಮ
ಕ್ಕಳುಗಳಾ ಧೃತರಾಷ್ಟ್ರ ತನುಸಂಭವರು ಕೌರವರು
ನೆಲನ ಹಂದುವಿನ ದಾಯಭಾಗದ
ಕಳವಳದೊಳಾಯ್ತಲ್ಲದುಳಿದಂ
ತೊಳಗು ಭಿನ್ನವೆ ಭೀಮ ಬಿಡು ಭಂಗಿಸದೆ ಸಾರೆಂದ ೨೦

ಸೈರಿಸೆಮ್ಮಪರಾಧವನು ಕುರು
ವೀರ ಸಂಚಿತಪಾಪಕರ್ಮವಿ
ಕಾರವಿದು ಭೋಗಾದಿ ನಿನಗೆಂದರಸ ದುಗುಡದಲಿ
ನೀರೊರೆವ ಕಣ್ಣುಗಳನೊರಸುತ
ಸೀರೆಯಲಿ ಗದಗದಿತ ಗಳದಲಿ
ಸಾರಹೃದಯ ಮಹೀಶನದ್ದನು ಖೇದಪಂಕದಲಿ ೨೧

ಕಂಡನೀವ್ಯತಿಕರವನರಸನ
ಮಂಡೆಯಂಘ್ರಿಯ ಭೀಮಸೇನನ
ದಂಡಿಯನು ದಟ್ಟಯಿಸೆ ಸುಯಿ ದಳ್ಳುರಿಯ ಚೂಣಿಯಲಿ
ಗಂಡುಗೆದರಿದ ರೋಷಶಿಖಿ ಹುರಿ
ಗೊಂಡುದಕ್ಷಿಗಳಲಿ ವೃಕೋದರ
ಕೊಂಡನೇ ತಪ್ಪೇನೆನುತ ನಿಂದಿದ್ದನಾ ರಾಮ ೨೨

ಎಲವೆಲವೊ ಪಾಂಡವರಿರಾ ನೀ
ವಳುಪಿದಿರಲಾ ನಾಭಿಯಿಂದವೆ
ಕೆಳಗೆ ಕೈಮಾಡುವುದು ಸಲ್ಲದು ಗದೆಯ ಕದನದಲಿ
ಚಲಿಸಲಾಗದು ಧರ್ಮನಿರ್ಣಯ
ದೊಳಗಿದೊಂದೇ ಭಾಷೆ ಮಾಡಿದಿ
ರಳಿದಿರನ್ಯಾಯದಲಿ ಕೊಂದಿರಿ ಕೌರವೇಶ್ವರನ ೨೩

ನೀವು ಮಾಡಿದ ಸತ್ಯಭಾಷೆಗೆ
ನೀವಲಾ ತಪ್ಪಿದಿರಿ ನೋಟಕ
ರಾವು ಮಧ್ಯಸ್ಥಿತರಲೇ ಧರ್ಮೈಕರಕ್ಷಕರು
ನಾವು ಸಾಕ್ಷಿಗಳಬಳರೆಂದೇ
ನೀವು ನೃಪತಿಯ ತೊಡೆಯನುಡಿದಿರಿ
ದಾವರವೆ ಸಾಕೈಸೆ ಕಾಲಿಕ್ಕಿದಿರಿ ಸಿರಿಮುಡಿಗೆ ೨೪

ಎಂದು ನೇಗಿಲ ತುದುಕಿಯೆಡಗೈ
ಯಿಂದ ನೆಗಹಿ ಮಹೋಗ್ರ ಮುಸಲವ
ನೊಂದು ಕಯ್ಯಲಿ ತಿರುಹಿ ಕೊಬ್ಬಿದ ಖತಿಯ ಭಾರದಲಿ
ಮುಂದೆ ನಡೆತರೆ ಸಕಲಸೇನಾ
ವೃಂದ ನಡುಗಿತು ಬಹಳ ಭೀತಿಯ
ಬಂದಿಯಲಿ ಜರುಗಿದವು ಜವಳಿಯ ಜಗದ ಜೋಡಿಗಳು ೨೫

ಬಿಲ್ಲ ಮಿಡಿದನು ಪಾರ್ಥ ಭಾರತ
ಮಲ್ಲ ಕೊಂಡನು ಗದೆಯ ನೃಪ ನಿಂ
ದಲ್ಲಿ ಬೆರಗಾದನು ರಣೋತ್ಸವವಾಯ್ತು ಯಮಳರಿಗೆ
ತಲ್ಲಣಿಸಿತುಳಿದರಸುಮಕ್ಕಳು
ಚಲ್ಲಿತಾ ಸುಭಟೌಘ ವಿಜಯದ
ಭುಲ್ಲವಣೆ ಪಲ್ಲಟಿಸಿತವರಿಗೆ ಖೇಡತನದೊಡನೆ ೨೬

ಹಲಧರನ ಖತಿ ಬಲುಹು ಕದನಕೆ
ಮಲೆತನಾದಡೆ ಹಾನಿ ತಪ್ಪದು
ಗೆಲವಿನಲಿ ಸೋಲದಲಿ ತಾನೌಚಿತ್ಯವೇನಿದಕೆ
ಒಳಗೆ ಬಿದ್ದ ವಿಘಾತಿ ಮುರರಿಪು
ತಿಳಿವನೋ ತವಕಿಸುವನೋ ನಾ
ವಳಿದೆವಿನ್ನೇನೆನುತ ನಡುಗಿದನಂದು ಯಮಸೂನು ೨೭

ಹಲಧರನ ಮುಸಕವನು ಪಾಂಡವ
ಬಲದ ದುಶ್ಚೇಷ್ಟೆಯನು ಭೀಮನ
ಫಲುಗುಣನ ಧರ್ಮಜರ ಯಮಳರ ಚಿತ್ತವಿಭ್ರಮವ
ಬಲಿಮಥನನೀಕ್ಷಿಸುತ ರಜತಾ
ಚಲವ ತರುಬುವ ನೀಲ ಗಿರಿಯಂವೊ
ಲಳುಕದಿದಿರಲಿ ನಿಂದು ಹಿಡಿದನು ಬಲನ ಬಲಗಯ್ಯ ೨೮

ಚಿತ್ತವಿಸಿರೇ ಬರಿಯ ರೋಷಕೆ
ತೆತ್ತಡೇನಹುದಂತರಂಗವ
ನುತ್ತಮರ ಪದ್ಧತಿಗಳಲಿ ಶಾಸ್ತ್ರಾರ್ಥನಿಶ್ಚಯವ
ಬಿತ್ತರಿಸುವುದು ಕೌರವೇಂದ್ರನ
ಕಿತ್ತಡವ ನೀವರಿಯಿರೇ ನಿಮ
ಗೆತ್ತಿದಾಗ್ರಹ ನಿಲಲಿ ತಿಳುಹುವೆನೆಂದನಸುರಾರಿ ೨೯

ಏನ ತಿಳುಹುವೆ ನೀನು ಶಾಸ್ತ್ರದೊ
ಳೇನ ನಡೆದರು ನಿನ್ನವರು ಯಮ
ಸೂನು ನುಡಿಯನೆ ಸಮಯವನು ಶಾಸ್ತ್ರೌಘಸಂಗತಿಯ
ಹೀನಗತಿ ಪಡಿತಳದ ಹೊಯ್ಲು
ತ್ತಾನ ಘಾಯದಲೊದಗಬೇಕೆಂ
ಬೀ ನಿಬಂಧನವಾರಲಳಿದುದು ಕೃಷ್ಣ ಹೇಳೆಂದ ೩೦

ಅದರಿನೀ ಕೌರವನ ತೊಡೆಗಳ
ಸದೆದನನ್ಯಾಯದಲಿ ನಿನ್ನವ
ನಿದಕೆ ಸೈರಿಸಬಹುದೆ ಹೇಳೈ ಧರ್ಮನಿರ್ಣಯವ
ಮದಮುಖನ ಭುಜಬಲವ ನೋಡುವ
ಡಿದು ವಿಕಾರವಲಾ ಎನುತ ಮುರ
ಬಿದನು ಬಲ ಬಲಗಯ್ಯನುರವಣಿಸಿದನು ಖಾತಿಯಲಿ ೩೧

ಹರಿದು ಹಿಡಿದನು ಮತ್ತೆ ನೀಲಾಂ
ಬರನ ಸೆರಗನು ನಿಮ್ಮ ಕುರುಪತಿ
ಚರಿಸಿದನಲಾ ಧರ್ಮವಿಸ್ತರವನು ವಿಭಾಡಿಸದೆ
ಕರಸಿ ಕಪಟದ್ಯೂತದಲಿ ನೃಪ
ವರನ ಸೋಲಿಸಿ ಪಟ್ಟದರಸಿಯ
ಕರಸಿ ಸುಲಿಸುವುದಾವ ಋಷಿಮತವೆಂದನಸುರಾರಿ ೩೨

ಎಣಿಸಬಹುದೇ ನಿಮ್ಮ ನೃಪನವ
ಗುಣವನನ್ಯಾಯ ಪ್ರಬಂಧಕೆ
ಗಣನೆಯುಂಟೇ ಭೀಮಗಡ ಖಂಡಿಸಿದ ತೊಡೆಗಳನು
ಕೆಣಕಿದನು ಮೈತ್ರೇಯನನು ನೃಪ
ನಣಕಿಸಲು ಶಪಿಸಿದನು ತೊಡೆಗಳ
ಹಣಿದವಾಡಲಿಯೆಂದನದು ತಪ್ಪುವುದೆ ಋಷಿವಚನ ೩೩

ಆ ಪತಿವ್ರತೆ ಬಯ್ದುಳೀ ಕುರು
ಭೂಪ ತೊಡೆಗಳ ತೋರಿ ಜರೆಯಲು
ದ್ರೌಪದಿಯ ನುಡಿ ತಪ್ಪುವುದೆ ಋಷಿವಚನದನುಗತಿಗೆ
ಕೋಪ ಕುಡಿಯಿಡಲೀ ವೃಕೋದರ
ನಾಪನಿತುಡಿದನು ಪ್ರತಿಜ್ಞಾ
ಸ್ಥಾಪನಕೆ ಬಳಿಕೇನ ಮಾಡುವುದೆಂದನಸುರಾರಿ ೩೪

ಎಂದು ರಾಮನ ಮನವ ನಯನುಡಿ
ಯಿಂದ ತಿಳುಹಿದನೈಸಲೇ ಬಳಿ
ಕಂದು ದುಗುಡದಲವರು ನಡೆದರು ದ್ವಾರಕಾಪುರಿಗೆ
ಬಂದ ಕಂಟಕ ಬಳಿಚಿತೇ ಸಾ
ಕೆಂದು ಹರಿ ಕುರುಪತಿಯ ಹೊರೆಗೈ
ತಂದು ಬೋಳೈಸಿದನು ಭೀಮಾರ್ಜುನ ಯುಧಿಷ್ಠಿರರ ೩೫

ಈಸುದಿನ ಪರಿಯಂತ ಧರ್ಮದ
ಮೀಸಲಳಿಯದೆ ಬಳಸಿ ಬಹಳಾ
ಯಾಸವನು ಸೈರಿಸಿದಿರಿಂದಿನ ಯುದ್ಧಕೇಳಿಯಲಿ
ಘಾಸಿಯಾದುದು ಧರ್ಮಗತಿ ಬುಧ
ರೇಸು ಮನಗಾಣರು ವೃಥಾಭಿನಿ
ವೇಶವಾದುದು ಮಕುಟಭಂಗದೆ ೞಳೆಂದನಾ ಭೂಪ ೩೬

ಅರಸ ತಲೆಗುತ್ತಿದನು ದೃಗು ಜಲ
ವುರವಣಿಸಿ ಮೌನದಲಿ ಫಲುಗುಣ
ನಿರೆ ಮುರಾರಿ ಸುಯೋಧನನ ಸರ್ವಾವಗುಣ ಗಣವ
ಪರಿಪರಿಯಲೆಚ್ಚರಿಸಿ ದುಗುಡವ
ಪರಿಹರಿಸಿ ಸಂತೈಸಿದಡೆ ಮುರ
ಹರನ ಬೈದನು ನಿನ್ನ ಮಗ ನಾನಾ ವಿಡಂಬದಲಿ ೩೭

ಆರ ಬಸುರಲಿ ಬಂದು ಮೊಲೆಯುಂ
ಡಾರ ಮಡಲಲಿ ಬೆಳೆದು ಬಳಿಕಿನೊ
ಳಾರ ಹೆಂಡಿರ ಕೊಂಡು ಕರು ತುರುಗಾದು ಕಳವಿನಲಿ
ವೀರ ದೈತ್ಯನ ಸದೆಬಡಿದು ಕುರು
ವೀರವಂಶದ ರಾಯರೆಮ್ಮೊಳು
ವೈರಬಂಧವ ಬಿತ್ತಿ ಕೊಂದವ ಕೃಷ್ಣ ನೀನೆಂದ ೩೮

ಬಣಗುಗಳು ಭೀಮಾರ್ಜುನರು ಕಾ
ರಣಿಕ ನೀ ನಡುವಾಯಿ ಧರ್ಮದ
ಕಣಿ ಯುಧಿಷ್ಠಿರನೆತ್ತಬಲ್ಲನು ನಿನ್ನ ಮಾಯೆಂಗಳ
ಸೆಣಸನಿಕ್ಕಿದೆ ನಮ್ಮೊಳಗೆ ಧಾ
ರುಣಿಯ ಭಾರವ ಬಿಡಿಸಲೋಸುಗ
ರಣವ ಹೊತ್ತಿಸಿ ನಮ್ಮ ಬೇಂಟೆಯನಾಡಿಸಿದೆಯೆಂದ ೩೯

ಪಾಪ ನಿನಗೀ ಗೋತ್ರವಧೆಯ ವಿ
ಳಾಪ ನಿನ್ನನು ತಾಗಲೀ ಸ
ರ್ವಾಪರಾಧವು ನಿನ್ನದೀ ಕೌರವರ ಪಾಂಡವರ
ಕೋಪವನು ಕೊನರಿಸುವ ನೃಪರನು
ತಾಪವನು ತೂಳುವ ಕುಬುದ್ಧಿ
ವ್ಯಾಪಕನು ನೀ ವೈರಿಯಲ್ಲದೆ ಭೀಮನಲ್ಲೆಂದ ೪೦

ರಣಮುಖದೊಳೀ ಕ್ಷತ್ರಧರ್ಮದ
ಕಣಿಕೆ ತಪ್ಪದೆ ವೇದಶಾಸ್ತ್ರದ
ಭಣಿತೆ ನೋಯದೆ ವೀರವೃತ್ತಿಯ ಪದದ ಪಾಡರಿದು
ಸೆಣಸು ಸೋಂಕಿದ ಛಲದ ವಾಸಿಯೊ
ಳಣುವ ಹಿಂಗದೆ ಜೀವದಾಸೆಗೆ
ಮಣಿಯದಳಿದುದನೆಲ್ಲ ಬಲ್ಲರು ಕೃಷ್ಣ ಕೇಳೆಂದ ೪೧

ಮತ್ತೆ ಹೂವಿನ ಮಳೆಗಳಾತನ
ನೆತ್ತಿಯಲಿ ಸುರಿದವು ಮುರಾಂತಕ
ನತ್ತ ತಿರುಗಿದನವನಿಪತಿ ಕರತಳವ ತಳುಕಿಕ್ಕಿ
ಮಂತ್ರಿದರು ಮಾಗಧರು ವಂದಿಗ
ಳೆತ್ತಣದು ನಾನರಿಯೆನರಸ ವಿ
ಯತ್ತಳವನಳ್ಳಿರಿದುದಾ ಸ್ತುತಿಪಾಠಕರ ರಭಸ ೪೨

ಗರುವ ಸುಭಟರು ಘಾಸಿಯಾದಿರಿ
ತುರಗ ಗಜ ಬಳಲಿದವು ಸೂರ್ಯನ
ತುರಗ ಬಿಡುತದೆ ಪಶ್ಚಿಮಾದ್ರಿಯ ತಡಿಯ ತಪ್ಪಲಲಿ
ತ್ವರಿತದಲಿ ಪಾಂಚಾಲ ಸೃಂಜಯ
ಧರಣಿಪರು ನೀವ್ ಹೋಗಿ ನಿದ್ರೆಯೊ
ಳಿರುಳ ನೂಕುವುದೆಂದು ನುಡಿದನು ದೈತ್ಯರಿಪು ನಗುತ ೪೩

ನಡೆಯಿ ಪಂಚದ್ರೌಪದೇಯರ
ಗಡಣ ಧೃಷ್ಟದ್ಯುಮ್ನ ನಿಳಯಕೆ
ನಡೆ ಯುಧಾಮನ್ಯೂತ್ತಮೌಂಜಸ ಕಲಿ ಶಿಖಂಡಿಗಳು
ತಡೆಯದಿರಿ ಭಟರೇಳಿ ವಾದ್ಯದ
ಗಡೆಬಡಿಗರೀ ಸಕಲಜನ ನೀವ್
ಕಡು ಬಳಲಿದಿರಿ ಹೋಗಿ ಪಾಳೆಯಕೆಂದು ನೃಪ ನುಡಿದ ೪೪

ಬೀಳುಕೊಂಡುದು ಸಕಲಬಲ ಪಾಂ
ಚಾಲ ಪಂಚದ್ರೌಪದೇಯರು
ಪಾಳೆಯವ ಹೊಕ್ಕರು ಯುಧಿಷ್ಠಿರನೃಪನ ನೇಮದಲಿ
ಏಳಿ ನಾವೀ ಕೌರವೇಂದ್ರನ
ಪಾಳೆಯವ ನೋಡುವೆವೆನುತ ವನ
ಮಾಲಿ ರಥವೇರಿದನಿವರು ತಂತಮ್ಮ ರಥವೇರೆ ೪೫

ನರ ಯುಧಿಷ್ಠಿರ ಭೀಮ ಸಹದೇ
ವರು ನಕುಲ ಸಾತ್ಯಕಿಸಹಿತ ಮುರ
ಹರನು ಹೊಕ್ಕನು ಕೌರವೇಂದ್ರನ ಶೂನ್ಯ ಶಿಬಿರವನು
ಅರಸ ಕರ್ಣ ದ್ರೋಣ ಮಾದ್ರೇ
ಶ್ವರನ ಭಗದತ್ತನ ನದೀಜಾ
ದ್ಯರ ನಿವಾಸಂಗಳನು ಕಂಡಳಲಿದನು ಯಮಸೂನು ೪೬

ಸೂತನಿಳಿದನು ಮುನ್ನ ರಥವನು
ಭೂತಳಾಧಿಪನಿಳಿದನಶ್ವ
ವ್ರಾತವನು ಕಡಿಯಣದ ನೇಣಲಿ ತೆಗೆದು ಬಂಧಿಸಿದ
ವಾತಜನ ಸಾತ್ಯಕಿಯ ಯಮಳರ
ಸೂತರಿಳಿದರು ಮುನ್ನ ತುರಗವ
ನಾತಗಳು ಸಂತೈಸಿದರು ಸಂಗರ ಪರಿಶ್ರಮವ ೪೭

ಇಳಿರಥವನೆಲೆ ಪಾರ್ಥ ಬಳಿಕಾ
ನಿಳಿವೆನೆಂದನು ಶೌರಿ ನೀವ್ ಮು
ನ್ನಿಳಿವುದೆಂದನು ಪಾರ್ಥನಾಯ್ತು ವಿವಾದವಿಬ್ಬರಿಗೆ
ಎಲೆ ಮರುಳೆ ನಾ ಮುನ್ನಿಳಿಯೆ ನೀ
ನುಳಿವೆಲಾ ಸಾಕಿನ್ನು ಗರ್ವದ
ಗಳಹತನವನು ಬಳಿಕ ತೋರುವೆ ರಥವನಿಳಿಯೆಂದ ೪೮

ಬಳಿಕ ಫಲುಗುಣ ರಥದ ಮೇಲಿಂ
ದಿಳೆಗೆ ಹಾಯ್ದನು ಕೃಷ್ಣ ನೀನಿ
ನ್ನಿಳಿಯೆನಲು ಚಮ್ಮಟಿಗೆ ವಾಘೆಯ ನೇಣ ರಥದೊಳಗೆ
ಇಳುಹಿ ನಗುತ ಮುಕುಂದ ರಥದಿಂ
ದಿಳಿಯೆ ಛಟಛಟಿಲೆಂದು ಕಿಡಿಯು
ಚ್ಚಳಿಸಲುರಿದುದು ತೇರು ಕೇಸುರಿ ನಭವನಪ್ಪಳಿಸೆ ೪೯

ಧ್ವಜದ ಹಲಗೆಯನೊದೆದು ಹಾಯ್ದನು
ನಿಜನಿವಾಸಕೆ ಹನುಮ ಧೂಮ
ಧ್ವಜನಮಯವಾದುದು ರಥಾಶ್ವ ರಥಾಂಗ ರಾಜಿಯಲಿ
ವಿಜಯ ಭೀಮಾದಿಗಳು ಕಂಡ
ಕ್ಕಜದೊಳಾಕಸ್ಮಿಕದ ಕಿಚ್ಚಿನ
ಗಜಬಜವಿದೇನೆನುತ ನೆರೆ ಬೆಚ್ಚಿದರು ಭೀತಿಯಲಿ ೫೦

ಹರಿಯಿದೇನಾಕಸ್ಮಿಕದ ದ
ಳ್ಳುರಿಯೊಳದ್ದುದು ತೇರು ನಮಗೀ
ಯರಿಯ ಭಯ ಭಾರಿಸಿತಿದೇನು ನಿಮಿತ್ತವಿದಕೆನಲು
ಉರಿವುದಂದೇ ತೇರು ಕರ್ಣನ
ಗುರು ನದೀನಂದನನ ದೈವಿಕ
ಶರಹತಿಯೊಳೆಮ್ಮಿಂದ ನಿಂದುದು ಪಾರ್ಥ ಕೇಳೆಂದ ೫೧

ನಾವಿಳಿದ ಬಳಿಕೀ ರಥದೊಳಿರ
ಲಾವ ಹದನೋ ನಿನಗೆ ಕಂಡ್ಯೆ
ದೈವಿಕಾಸ್ತ್ರದ ಮಹಿಮೆಗಳನೆನೆ ಪಾರ್ಥ ತಲೆವಾಗಿ
ನೀವು ಬಲ್ಲಿರಿ ದೇವ ನೀ ಮಾ
ಯಾವಿ ಮಾಯಾಪಾಶಬದ್ಧರು
ನಾವು ಬಲ್ಲೆವೆ ನಿಮ್ಮನೆಂದೆರಗಿದನು ಚರಣದಲಿ ೫೨

ಧರಣಿಪತಿ ಕೇಳೀಚೆಯಲಿ ಕೃಪ
ಗುರುತನುಜ ಕೃತವರ್ಮಕರು ನ
ಮ್ಮರಸನೇನಾದನೊ ವಿರೋಧಿಯ ದಳದ ವೇಢೆಯಲಿ
ತರಣಿ ತಿಮಿರಕೆ ತೆರಹುಗೊಟ್ಟನು
ಭರತಖಂಡವನಿನ್ನು ರಾಯನ
ಪರಿಗತಿಯನಾರೈವೆವೆನುತೇರಿದರು ನಿಜರಥವ ೫೩

ಭರದಲಿವರು ನೃಪಾಲನಡಗಿದ
ಸರಸಿಗೈತಂದಿಳಿದು ತಡಿಯಲಿ
ತುರಗವನು ಬಿಡಿಸಿದರು ಸಾರಥಿ ಹೊಗಿಸಿದನು ಕೊಳನ
ತ್ವರಿತದಲಿ ಶೌಚಾಚಮನ ವಿ
ಸ್ತರಣ ಸಂಧ್ಯಾವಂದನಾದಿಯ
ವಿರಚಿಸಿದರರಸಿದರು ಕೊಳನಲಿ ಕೌರವೇಶ್ವರನ ೫೪

ಬಳಸಿ ಜಂಬುಕ ಘೂಕ ಕಾಕಾ
ವಳಿಗಳೆದ್ದವು ಮೇಲುವಾಯ್ದು
ವ್ವಳಿಸಲಮ್ಮದೆ ಗಾಢತರ ಗರ್ಜನೆಗೆ ಕುರುಪತಿಯ
ಕಳಕಳವಿದೆತ್ತಣದೆನುತ ಕಳ
ವಳಿಸಿ ಬಂದು ಮಹಾರಥರು ನೃಪ
ತಿಲಕನಿರವನು ಕಂಡು ಧೊಪ್ಪನೆ ಕೆಡದರವನಿಯಲಿ ೫೫

ಉಡಿದ ತೊಡೆಗಳ ಮಗ್ಗುಲಲಿ ಹೊನ
ಲಿಡುವ ರಕುತದ ಭೀಮಸೇನನ
ಮಡದ ಹೊಯ್ಲಲಿ ಕೆಲಕೆ ಸೂಸಿದ ಮಕುಟಮಣಿಮಯದ
ಕೆಡೆದು ಮೈವೇದನೆಗೆ ನರಳುವ
ನಿಡುಸರದ ಖಗ ಜಂಬುಕೌಘವ
ನಿಡುವ ಕೈಗಲ್ಲಿಂಗಳ ನೃಪತಿಯ ಕಂಡರಿವರಂದು ೫೬

ಒರಲಿದರು ಧರೆ ಬಿರಿಯೆ ಹುಡಿಯಲಿ
ಹೊರಳಿದರು ಬಾಯ್ಗಳನು ಹೊಯ್ ಹೊ
ಯ್ದರಿಚಿ ಕೆಡೆದರು ಕುಂದಿದರು ಕಾತರಿಸಿ ಕಳವಳಿಸಿ
ಮರುಗಿದರು ಮನಗುಂದಿದರು ಮೈ
ಮರೆದರದ್ದರು ಶೋಕಜಲಧಿಯೊ
ಳರಲುಗೊಂಡರು ತಳ್ಳಬಾರಿದರವರು ನಿಮಿಷದಲಿ ೫೭

ಹದುಳಿಸಿರೆ ಸಾಕೇಳಿ ಸಾಕಿ
ನ್ನಿದರಲಿನ್ನೇನಹದು ದೈವದ
ಕದಡು ಮನಗಾಣಿಸಿತು ನಮಗೀ ಕಂಟಕವ್ಯಥೆಯ
ಉದಯದಲಿ ನಾವೀ ಶರೀರವ
ನೊದೆದು ಹಾಯ್ವೆವು ನೀವು ನಿಜಮಾ
ರ್ಗದಲಿ ಬಿಜಯಂಗೈವುದೆಂದನು ನಗುತ ಕುರುರಾಯ ೫೮

ಶೋಕವಡಗಿದುದವರಿಗಂತ
ರ್ವ್ಯಾಕುಳತೆ ಬೀಳ್ಕೊಂಡುದಹುದಿ
ನ್ನೇಕೆ ಸಂವೇಶಾನುಭೂತಾನುಭವ ದುರ್ವ್ಯಸನ
ಸಾಕದಂತಿರಲಿನ್ನು ಬಿಡು ನೀ
ಸಾಕಿತಕೆ ಫಲವೆನಿಸಿ ರಜನಿಯೊ
ಳಾ ಕುಠಾರರ ತಲೆಗಳನು ತಹೆನೆಂದನಾ ದ್ರೌಣಿ ೫೯

ಅಕಟ ಮರುಳೇ ಗುರುಸುತನ ಮತಿ
ವಿಕಳತನವನು ಕೃಪನು ಕೃತವ
ರ್ಮಕರು ಕಂಡಿರೆ ಪಾಂಡವರ ತಲೆ ತನಗೆ ಗೋಚರವೆ
ಬಕನ ಧರ್ಮಸ್ಥಿತಿಯವೊಲಂ ದೇ
ವಕಿಯ ಮಗ ಕಾದಿಹನಲೇ ಕೌ
ಳಿಕದ ಸಿದ್ಧನ ಕೃತಿಯನಾರಿಗೆ ವಿಾರಬಹುದೆಂದ ೬೦

ಹರಿಹರಬ್ರಹ್ಮಾದಿದೇವರು
ವೆರಸಿ ಕಾಯಲಿ ರಾತ್ರಿಯಲಿ ರಿಪು
ಶಿರವ ತಹೆನಿದಕೇಕೆ ಸಂಶಯವೆನ್ನ ಕಳುಹುವುದು
ಇರಲಿ ಕೃಪಕೃತವರ್ಮಕರು ಹ
ತ್ತಿರೆ ರಣಾಧ್ಯಕ್ಷದಲಿ ಭಾಷಾ
ಚರಣ ಪೈಸರಿಸಿದಡೆ ದ್ರೋಣನ ತನಯನಲ್ಲೆಂದ ೬೧

ಆಗಲಾ ಪಾಂಡವರ ವಧೆ ನಿನ
ಗಾಗಲರಿಯದು ನಿನ್ನ ಭುಜಬಲ
ವಾಗುರಿಯ ವೇಢೆಯಲಿ ಬೀಳದು ಕೃಷ್ಣಬುದ್ಧಿಮೃಗ
ಈಗಳೀ ನಿರ್ಬಂಧವಚನವಿ
ರಾಗಮೆವಗೇಕಾರಿಗಾವುದು
ಭಾಗಧೇಯವದಾಗಲೆಂದನು ಕೌರವರರಾಯ ೬೨

ವರ ಚಮೂಪತಿ ನೀನು ಬಳಿಕಿ
ಬ್ಬರು ಚಮೂವಿಸ್ತಾರವೆನೆ ವಿ
ಸ್ತರಿಸಿ ರಚಿಸುವುದೆಂದು ರಥಿಕತ್ರಯಕೆ ನೇಮಿಸಿದ
ಗುರುಜ ಕೃಪ ಕೃತವರ್ಮರೀ ಮೂ
ವರು ನರೇಂದ್ರನ ಬೀಳುಕೊಂಡರು
ಕರೆದು ಸೂತರ ಸನ್ನೆಯಲಿ ಬಂದೇರಿದರು ರಥವ ೬೩

ಇವರು ಬಂದರು ದಕ್ಷಿಣದ ದೆಸೆ
ಗವರ ಪಾಳೆಯಕಾಗಿ ಸುತ್ತಲು
ಸವಡಿಗತ್ತಲೆಯಾಯ್ತು ಘನರೋಷಾಂಧಕಾರದಲಿ
ಇವರು ಮನದಲಿ ಕುಡಿದರಹಿತಾ
ರ್ಣವವರಿವರಿಗೆ ಗೋಚರವೆ ಪಾಂ
ಡವರು ಗದುಗಿನ ವೀರನಾರಾಯಣನ ಕರುಣದಲಿ ೬೪

ಒಂಬತ್ತನೆಯ ಸಂಧಿ

ಸೂ. ರಾಯಪರಬಲ ಮದನಹರ ರಿಪು
ರಾಯಕುವರರು ಸಹಿತ ಪಾಂಡವ
ರಾಯಕಟಕವ ಕೊಂದನಶ್ವತ್ಥಾಮ ರಜನಿಯಲಿ

ಕೇಳು ಧೃತರಾಷ್ಟ್ರಾವನಿಪ ನಿ
ನ್ನಾಳ ಚಿತ್ತದ ಚಟುಳ ಪಣದ ಚ
ಡಾಳತನವನು ಸಂಗರದೊಳುದ್ದಾಮ ಸತ್ವದಲಿ
ಪಾಳಿಯುವ ಸಾರಿದರು ವಿಟಪಲ
ತಾಳಿವಿಶ್ರಮ ತಿಮಿರಗಹನವಿ
ಶಾಲ ವಟಕುಜವಿರಲು ಕಂಡರು ನಿಲಿಸಿದರು ರಥವ ೧

ನಿಲುವೆವಿಲ್ಲಿವಿರೋಧಿಸಂತತಿ
ಯುಲುಹನಾಲಿಸಬಹುದು ಕೋಟಾ
ವಳಯವಿದೆ ಹತ್ತಿರೆಯೆನುತ ಗುರುಸೂನು ರಥವಿಳಿಯೆ
ಇಳಿದರಿಬ್ಬರು ಸೂತರಿಗೆ ಕೈ
ಕೊಳಿಸಿದರು ಕುದುರೆಗಳನಾ ಕಲು
ನೆಲದೊಳೊರಗಿದರವರು ಸಮರಶ್ರಮದ ಭಾರದಲಿ ೨

ಒಳಗೆ ತೊಳಲಿಕೆಯಿಂಕ್ಕಡಕೆ ಕಳ
ವಳಿಸಿ ಹಾಯಿದರೊಮ್ಮೆ ಮತ್ತಂ
ತೆಲೆಮಿಡುಕದಾಲಿಸಿ ನಿಧಾನಿಸಿ ಸಾರಿದರು ಮರನ
ಬಳಲಿಕೆಯ ಬೇಸರಿನೊಳಾ ಕೃಪ
ಮಲಗಿದನು ಕೃತವರ್ಮನೊಲೆದಾ
ಗಳಿಸಿ ತೂಕಡಿಸಿದನು ತೆಗೆದುದು ನಿದ್ರೆ ತನುಮನವ ೩

ಕುಸಿದು ಜೊಮ್ಮಿನ ಜಾಡ್ಯದಲಿ ಝೊಂ
ಪಿಸಿದರಿಬ್ಬರು ರಾಯಗರುಡಿಯ
ಜಸದ ಜಹಿಯಲಿ ಸ್ವಾಮಿಕಾರ್ಯದ ಹೊತ್ತಹೊರಿಗೆಯಲಿ
ಉಸುರು ಮಿಡುಕದೆ ನಿದ್ರೆ ನೆನಹಿನ
ಮುಸುಕನುಗಿಯದೆಯಿಷ್ಟಸಿದ್ಧಿಯ
ವಿಷಮ ಸಮಸಂಧಿಗಳ ಸರಿವಿನೊಳಿರ್ದನಾ ದ್ರೌಣಿ ೪

ಭಾಗ ಬೀತುದು ರಜನಿಯಲಿ ಸರಿ
ಭಾಗವಿದ್ದುದು ಮೇಲೆ ತತ್ಕ್ಷಣ
ಗೂಗೆ ಬಂದುದದೊಂದು ವಟಕುಜದಗ್ರಭಾಗದಲಿ
ಕಾಗೆಗಳ ಗೂಡುಗಳ ಹೊಯ್ದು ವಿ
ಭಾಗಿಸಿತು ತುಂಡದಲಿ ಬಿದ್ದವು
ಕಾಗೆ ಸಂಭಟನ ಸಮ್ಮುಖದಲಿ ಸಹಸ್ರಸಂಖ್ಯೆಯಲಿ ೫

ಇದು ಮದೀಯ ಮನೋರಥದ ಸಂ
ಹೃದಯದೊಲು ಸಂಕಲ್ಪಕಾರ್ಯಾ
ಭ್ಯುದಯ ಸೂಚಕವಾಯ್ತು ನಿದ್ರಾಮುದ್ರಿತೇಕ್ಷಣರ
ಪದವ ಹಿಡಿದಲ್ಲಾಡಿಸಿದಡೆ ಮೈ
ಬೆದರುತೇನೇನೆನುತ ನಿದ್ರಾ
ಮದವಿಘೂರ್ಣನವಡಗಿ ಕುಳ್ಳಿರ್ದರು ಮಹಾರಥರು ೬

ಏನು ಗುರುಸುತ ಕಾರ್ಯದನುಸಂ
ಧಾನವೇನೆನೆ ವಾಯಸಂಗಳ
ನಾ ನಿಶಾಟನನಿರಿವುತದೆ ಗೂಡುಗಳನಬ್ಬರಿಸಿ
ಈ ನಿದರುಶನದಿಂದ ಪಾಂಡವ
ಸೇನೆಯನು ಕಗ್ಗೊಲೆಯೊಳಗೆ ಕೊಲ
ಲೇನು ಹೊಲ್ಲೆಹ ಮಾವ ಎಂದನು ಗುರುಸುತನು ಕೃಪಗೆ ೭

ಲೇಸಲೈ ಕೃತವರ್ಮ ಬಳಿಕೇ
ನಾಸುರದ ಕಗ್ಗೊಲೆಗೆ ರಾಜಾ
ದೇಶದಲಿ ನಾವ್ ಬಂದೆವೀ ಪಾಂಡವರ ಪಾಳೆಯಕೆ
ಘಾಸಿಯಾಗರು ಪಾಂಡು ಸುತರಿಗೆ
ವಾಸುದೇವನ ಕಾಹು ಘನ ಕಾ
ಳಾಸ ತಪ್ಪಿದ ಬಳಿಕ ನಮಗಪಕೀರ್ತಿ ಬಹುದೆಂದ ೮

ಕೃತುಹರನ ಸಮಜೋಳಿ ಗಂಗಾ
ಸುತನ ಜಯಿಸಿದರವರ ತೂಕದ
ವಿತತಬಲರೈ ಭಾವನವರೊಗ್ಗಿದರು ದಿವಿಜರಲಿ
ಅತಿರಥರೊಳಗ್ಗಳಿಯ ರಾಧಾ
ಸುತ ಸುಯೋಧನ ಮಾದ್ರಪತಿಯೀ
ವ್ಯತಿಕರದೊಳೇನಾದರಿದು ಮುರಹರನ ಕೃತಿಯೆಂದ ೯

ಇರಿಸನಿಲ್ಲಿ ಮುರಾರಿ ಕೌಂತೇ
ಯರನಿದೊಂದು ನಿಧಾನ ಮೇಣಿ
ಲ್ಲಿರಿಸಿದಡೆ ಕೋಲಲೀಯನಡ್ಡೈಸುವನು ಚಕ್ರದಲಿ
ಇರುಳು ಹಗಲಡವಿಯಲಿ ಮನೆಯಲಿ
ಶರಧಿಯಲಿ ಪರ್ವತದಲಗ್ನಿಯ
ಲಿರಲಿ ತನ್ನವರಲ್ಲಿ ಹರಿಗವಧಾನ ಬಲುಹೆಂದ ೧೦

ಮರಹಿನಲಿ ಮುಡುಹುವುದು ಧರ್ಮದ
ಹೊರಿಗೆಯಲ್ಲದು ನಿದ್ರೆಗೈದರ
ನಿರಿವುದೇನಿದು ಪಂಥವೇ ಪೌರಾಣಮಾರ್ಗದಲಿ
ಅರಿಯದಾರಂಭಿಸಿದೆವಿದರಲಿ
ಪರಿಸಮಾಪ್ತಿಯ ಕಂಡೆವಾದಡೆ
ನೆರೆ ಕೃತಾರ್ಥರು ವಿಘ್ನಶತವಡ್ಡೈಸದಿರವೆಂದ ೧೧

ತಪ್ಪದಾಚಾರಿಯನ ನುಡಿ ಮೇ
ಲಪ್ಪುದನು ದೈವಾಭಿಯೋಗದೊ
ಳೊಪ್ಪವಿಡುವುದು ರಜನಿಯಲಿ ಕಳ್ೞೇರ ಕದನದಲಿ
ಒಪ್ಪದಿದು ಸೌಭಟ ವಿಧಾನಕೆ
ನೊಪ್ಪಿತಹುದಿದರಿಂದ ರಿಪುಗಳ
ತಪ್ಪಿಸುವನಸುರಾರಿಯೆಂದನು ನಗುತ ಕೃತವರ್ಮ ೧೨

ಆದಡಿರಿ ನೀವಿಬ್ಬರಿಲ್ಲಿ ವಿ
ವಾದ ನಿಮ್ಮೊಡನೇಕೆ ಜನಪರಿ
ವಾದ ಭಯವೆಮಗಿಲ್ಲ ಸಾರಥಿ ರಥವ ತಾಯೆನುತ
ಕೈದುಗಳ ಸಂವರಿಸಿ ರಥದಲಿ
ಹಾಯ್ದು ಹೊರವಡೆ ಭೋಜಕೃಪರನು
ವಾದಡೆಮಗೇನೆನುತ ಬಂದರು ಪಾಳೆಯದ ಹೊರಗೆ ೧೩

ಮುರಿದು ಕೋಟೆಯನೊಂದು ಕಡೆಯಲಿ
ತೆರಹುಮಾಡಿ ಮಹಾರಥರು ಜನ
ವರಿಯದವೊಲೊಳಹೊಕ್ಕು ಹೆಬ್ಬಾಗಿಲಲಿ ರಥವಿಳಿದು
ತರವಳರ ತೊಳಲಿಕೆಯ ಮೇಲೆ
ಚ್ಚರಿಕೆ ಮಸುಳಿಸೆ ಮಧ್ಯರಾತ್ರಿಯೊ
ಳಿರಿತದಂಘವಣೆಯಲಿ ಪರುಠವಿಸಿದನು ಗುರುಸೂನು ೧೪

ಎರಡು ಬಾಗಿಲ ಪಾಳೆಯಂಕೆ ಕೃಪ
ನಿರಲಿ ಮೂಡಲು ಪಶ್ಚಿಮಾಂಗದೊ
ಳಿರಲಿ ಕೃತವರ್ಮಕನು ಬಾಗಿಲೊಳಾಂತ ರಿಪುಜನವ
ಕರಿ ತುರಗ ರಥ ಪತ್ತಿಗಳ ಸಂ
ಹರಿಸುವುದು ನೀವಿಲ್ಲಿ ಮಧ್ಯದೊ
ಳರಸು ಮೊತ್ತಕೆ ಮಿತ್ತು ತಾನಹೆನೆಂದು ಕೈಗೊಂಡ ೧೫

ಎರಡು ಬಾಗಿಲೊಳಿವರನಿಬ್ಬರ
ನಿರಿಸಿ ಚಾಪವ ಮಿಡಿದು ಬಾಣವ
ತಿರುಹುತೊಬ್ಬನೆ ರಥವ ಬಿಟ್ಟನು ರಾಜಬೀದಿಯಲಿ
ಅರಸ ಕೇಳದುಭುತವನಾ ನಡು
ವಿರುಳು ನೃಪವೀಥಿಯಲಿ ನಿಂದುದು
ಧರೆಗೆ ಗಗನಕೆ ಕೀಲನಿಕ್ಕಿದವೊಲು ಮಹಾಭೂತ ೧೬

ನಿಟಿಲನಯನದ ಜಡಿವ ಜೂಟದ
ಜಟೆಯ ಪೂತ್ಕೃತಿಯುರಿಯ ನಾಸಾ
ಪುಟದ ವೈಕಕ್ಷಕದ ವಿಷಧರಪತಿಯ ವಾಸುಗಿಯ
ಚಟುಳ ಚಪಳಪ್ರಭೆಯ ಘನಸಂ
ಘಟಿತವೆನೆ ಗರ್ಗರದ ಘೋರ
ಸ್ಫುಟರವದ ರೌದ್ರಾಭಿರತಿಯಲಿ ರಂಜಿಸಿತು ಭೂತ ೧೭

ಬೆಚ್ಚಿದನೆ ಭಾರಣೆಯ ಭೂತವ
ನೆಚ್ಚು ಬೊಬ್ಬಿರಿದಾರಿದನು ಮಗು
ಳೆಚ್ಚನೈದಾರೇಳುನೂರೈನೂರು ಸಾವಿರವ
ಎಚ್ಚು ಹಾಯ್ದಂಬುಗಳು ಭೂತದ
ಬಿಚ್ಚುಗಂಗಳ ಕೊಂಡದುರಿಯಲಿ
ಬಚ್ಚಿಸಿದ ಗರಿ ಸೀದು ಸೀಕರಿಯೋಗಿ ನಿಮಿಷದಲಿ ೧೮

ಉಗಿದು ಮಂತ್ರಾಸ್ತ್ರವನು ತಿರುವಿಂ
ದುಗುಳಿಚಿದಡಾ ಭೂತದಂಘ್ರಿಗೆ
ಮುಗಿದ ಕೈಗಳಲೆರಗಿದರು ಶಸ್ತ್ರಾದಿದೇವಿಯರು
ಉಗಿದನೊರೆಯಲಡಾಯುಧವನು
ಬ್ಬೆಗದಲಪ್ಪಳಿಸಿದಡೆ ಕಯ್ಯಿಂ
ಜಗುಳ್ದು ಬಿದ್ದುದು ಝುಂಕೆಯುದ್ದುದು ಭಯದ ಝಾಡಿಯಲಿ ೧೯

ಕಾಕಮುಖದ ಮಯೂರ ಟಿಟ್ಟಿಭ
ಕೋಕವದನದ ಹಂಸ ಕಂಕ ಬ
ಳಾಕವಕ್ತ್ರದ ಗೌಜಂ ಗೀಜಗ ಚಾತಕಾನನದ
ಘೂಕಮುಖದ ಸೃಗಾಲ ಶಾರ್ದೂ
ಲಾಕೃತಿಯ ಬಹುವಿಧದ ರೂಪದ
ನೇಕ ಭೂತವ್ರಾತ ನೆರೆದುದು ಭೂಪ ಕೇಳೆಂದ ೨೦

ಇದು ವಿರೂಪಾಕ್ಷನ ಮನಃಕ್ಷೋ
ಭದ ವಿಕಾರವಲಾ ಪಿನಾಕಿಯ
ಪದವ ಹಿಡಿದೋಲೈಸುವೆನು ಸರ್ವಾಂಗಯಜ್ಞದಲಿ
ಇದಕುಪಾಯವ ಬಲ್ಲೆನೆಂದು
ಬ್ಬಿದನು ಬೊಬ್ಬಿರಿದಾರಿ ತೋಡಿದ
ನುದರವಹ್ನಿಯನಿದಿರೊಳಗ್ನಿತ್ರಯವ ನಿರ್ಮಿಸಿದ ೨೧

ಸೆರೆನರಂಗಳ ದರ್ಭೆ ಮಿದುಳಿನ
ಚರು ಕಪಾಲದ ಪಾತ್ರೆಯೆಲುವಿನ
ಬೆರಳ ಸಮಿಧೆ ವಿಶಾಳದನುಮಜ್ಜೆಗಳ ಪೃಷದಾಜ್ಯ
ಅರುಣಜಲದಾಜ್ಯಾಹುತಿಯ ವಿ
ಸ್ತರವ ವಿರಚಿಸಿ ನಿಗಮಮಂತ್ರೋ
ಚ್ಚರಣೆಯಲಿ ಪೂರ್ಣಾಹುತಿಗೆ ತನ್ನೊಡಲನೊಪ್ಪಿಸಿದ ೨೨

ಮೆಚ್ಚಿದನು ಮದನಾರಿ ಹೋಮದ
ಕಿಚ್ಚು ತುಡುಕದ ಮುನ್ನ ತೆಗೆದನು
ಬಿಚ್ಚುಜಡೆಗಳ ಜಹ್ನುಸುತೆಯಲಿ ನಾದಿದನು ಭಟನ
ಎಚ್ಚ ಶರವಿದೆ ಖಡ್ಗವಿದೆ ಕೋ
ಮುಚ್ಚುಮರೆಯೇಕಿನ್ನು ಸುತರಲಿ
ಚೊಚ್ಚಲವ ನೀನೆಂದು ಮೈದಡವಿದನು ಶಶಿಮೌಳಿ ೨೩

ಸಾರಥಿಗಳೊಳಗೆನಿಸಿದನು ಭೂ
ಭಾರಭಂಜಕನಸುರಹರನೀ
ಭಾರ ಬಿದ್ದುದು ನಮಗೆ ಪಾಂಚಾಲಪ್ರಬದ್ಧಕರ
ತೀರಿತಿದು ನಿಮ್ಮಲ್ಲಿ ನಮ್ಮ ವಿ
ಹಾರವೊಡಬೆಚ್ಚಿತು ರಿಪುವ್ರಜ
ಮಾರಣಾಧ್ವರಕೃತಿಯ ನೀ ಕೈಕೊಳಿಸು ಹೋಗೆಂದ ೨೪

ಎನೆ ಪುರಾರಿಯ ಪದಯುಗಕೆ ಗುರು
ತನುಜ ಮೈಯಿಕ್ಕಿದನು ಬೀಳ್ಕೊಂ
ಡನು ತಿರೋಹಿತನಾದನೀಶ್ವರನೀತನನು ಕಳುಹಿ
ಧನುವ ಕೊಂಡನು ಧೂರ್ಜಟಿಯ ರೂ
ಹಿನ ಮಹಾರಥ ರಥವನೇರಿದ
ನನುವರದ ರೌರವವನಂಘೈಸಿದನು ರಜನಿಯಲಿ ೨೫

ಧರಣಿಪತಿ ಕೇಳ್ ರಾಜಬೀದಿಯೊ
ಳುರವಣಿಸಿ ಗುರುಸೂನು ರಥದಲಿ
ಬರುತ ಕಂಡನಲೈ ಯುಧಿಷ್ಠಿರ ರಾಜಮಂದಿರವ
ಇರರು ಪಾಂಡವರಿಲ್ಲಿ ಮೇಣವ
ರಿರಲಿ ಬಳಿಕಾರೈವೆನಯ್ಯನ
ಹರಿಬ ಹೋಗಲಿ ಮುನ್ನ ಕೊಲುವೆನು ದ್ರುಪದನಂದನನ ೨೬

ಎಂದು ರಾಯನ ಗುಡಿಯ ಗೂಢದ
ಮಂದಿರದ ಬಲವಂಕವೀಧಿಯ
ಮುಂದೆ ಧೃಷ್ಟದ್ಯುಮ್ನನರಮನೆಗಾಗಿ ವಹಿಲದಲಿ
ಬಂದು ಬಾಗಿಲ ಮುರಿದು ಕಾಹಿನ
ಮಂದಿಯನು ನಿಡುನಿದ್ರೆಗೈಸಿದ
ನಂದು ಮಿಣ್ಣನೆ ಹೊಕ್ಕನಾತನ ಸೆಜ್ಜೆಯೋವರಿಯ ೨೭

ತೊಳತೊಳಗುವಿಕ್ಕೆಲದ ದೀಪದ
ಬೆಳಗಿನಲಿ ಮಣಿರಚಿಯ ಚಿತ್ರಾ
ವಳಿಯ ಮೇಲ್ಕಟ್ಟಿನಲಿ ಲಲಿತಸ್ತರಣ ಮಧ್ಯದಲಿ
ಹೊಳೆಹೊಳೆವ ನವರತ್ನಭೂಷಣ
ಕಳಿತಕಾಯನ ಕಂಡು ರೋಷ
ಪ್ರಳಯ ಭೈರವರೂಪನೊದೆದನು ವಾಮಪಾದದಲಿ ೨೮

ಘಳಿಲನೆದ್ದನಿದಾರು ನಿದ್ರೆಯ
ನಳಿದವನ ತಿವಿಯೆನುತ ಮುಂದಣ
ವಿಳಯರುದ್ರನ ರಹಿಯ ರೌದ್ರದ ರಣಭಯಂಕರನ
ನಿಲವ ಕಂಡನಡಾಯುಧವ ತಾ
ಹಲಗೆಯಾವೆಡೆಯೆಂಬವನ ಮುಂ
ದಲೆಯ ಹಿಡಿದಡಗೆಡಹಿ ಕುಸುರಿದರಿಯನಸಬಡಿದ ೨೯

ಉಗಿದು ಬಿಲ್ಲಿನ ತಿರುವ ಕೊರಳಲಿ
ಬಿಗಿಯೆ ಭಯದಲಿ ದ್ರುಪದಸುತ ಬೆರ
ಳುಗಳ ಬಾಯಲಿ ಬೇಡಿಕೊಂಡನು ದ್ರೋಣನಂದನನ
ಉಗಿದಡಾಯ್ಧದಲೆನ್ನ ಶಿರವನು
ತೆಗೆದು ಕಳೆಯ್ಯ ಶಸ್ತ್ರಘಾತದಿ
ನುಗುಳಿಸಸುವನು ತನಗೆ ವೀರಸ್ವರ್ಗವಹುದೆಂದ ೩೦

ಅಕಟ ಗುರುಹತ್ಯಾ ಮಹಾಪಾ
ತಕಿಯೆ ನಿನಗೇ ಸ್ವರ್ಗ ದೇವ
ಪ್ರಕರ ನಿನ್ನನು ಹೊಗಿಸಿದಡೆ ಸುಡುವೆನು ಸುರಾಲಯುವ
ಕ್ರಕಚ ಕುಂಭೀಪಾಕಮುಖ ನಾ
ರಕದೊಳರಮನೆ ನಿನಗೆ ಕೌಕ್ಷೇ
ಯಕದ ಹತಿ ಗಡ ತನಗೆನುತ ಕಟ್ಟಿದನು ತಿರುವಿನಲಿ ೩೧

ಉರಲ ಹತ್ತಿಸಿ ಸೆಳೆಯೆ ಗೋಣಲಿ
ಗುರುಗುರಿಸಲಸು ಜಾರಿದುದು ಬೊ
ಬ್ಬಿರಿದು ಹೊಕ್ಕನು ಕದವನೊದೆದು ಶಿಖಂಡಿಯರಮನೆಯು
ತರಿದನಾತನನುತ್ತಮೌಂಜಸ
ನರಸಿ ಹೊಯ್ದನು ಹೊಕ್ಕು ಬಾಗಿಲ
ಮುರಿದು ಮೈಯೆರಿಹಿಸಿ ಯುಧಾಮನ್ಯುವ ವಿದಾರಿಸಿದ ೩೨

ಗಜಬಜವಿದೇನೆನುತ ನಿದ್ರೆಯ
ಮಜಡರೊಳಗೊಳಗರಿದರೀತನ
ಭುಜಬಲಕೆ ಮಲೆತವರ ಕಾಣೆನು ಸೃಂಜಯಾದಿಗಳ
ರಜನಿಯಲಿ ರೌಕುಳವ ಮಾಡಿದ
ನಜಿತಸಾಹಸನಿತ್ತ ದ್ರುಪದಾ
ತ್ಮಜೆಯ ಭವನದ ಹೊರೆಗೆ ಬಂದನು ಪಾಂಡವರನರಸಿ ೩೩

ಇದು ಯುಧಿಷ್ಠಿರ ರಾಜಗೃಹವೆಂ
ದೊದೆದು ಕದವನು ಕಾಹಿನವರನು
ಸದೆದು ಹೊಕ್ಕನು ಸಜ್ಜೆಯಲಿ ಧರ್ಮಜನ ನಂದನನ
ಒದೆದಡೆದ್ದನು ಸುರಗಿಯಲಿ ಕಾ
ದಿದನು ಖಡುಗವ ಜಡಿದು ನಿಮಿಷಾ
ರ್ಧದಲಿ ತಲೆಯನು ನೆಗಹಿ ಪ್ರತಿವಿಂಧ್ಯಕನಸುಗಳೆದ ೩೪

ಜನಪ ಕೇಳ್ವೈ ಬಳಿಕ ಸುತಸೋ
ಮನನು ಶ್ರುತಕೀರ್ತಿಯ ಶತಾನೀ
ಕನನು ಶ್ರುತವರ್ಮನನು ತರಿದನು ದ್ರೌಪದೀಸುತರ
ಜನಪರೈವರ ತಲೆಗಳೆಂದೇ
ಕನಕರಥದೊಳಗಿರಿಸಿ ಹೊಕ್ಕನು
ಮನೆಮನೆಗಳಲಿ ಸವರಿದನು ಸೋಮಪ್ರಬದ್ಧಕರ ೩೫

ಸೀಳ ಬಡಿದನು ಸಮರಥರ ಪಾಂ
ಚಾಳ ರಾವುತರನು ಮಹಾರಥ
ಜಾಲವನು ಜೋಧರನು ಭಾರಿಯ ಪಾರಕವ್ರಜವ
ಸಾಲ ಹೊಯ್ದನು ಹುಯ್ಯಲಿಗೆ ಹೊಗು
ವಾಳ ತರಿದನು ಖಡ್ಗಮುಷ್ಟಿಯ
ಕಾಲಭೈರವ ಬೀದಿವರಿದನು ಕೇರಿಕೇರಿಯಲಿ ೩೬

ಎಲೆಲೆ ಕವಿ ಕಳ್ಳೇರುಕಾರನ
ತಲೆಯ ಹೊಯ್ ಹೊಯ್ಯೆನುತ ನಿದ್ರಾ
ಕುಳರು ಗರ್ಜಿಸುತಾಗುಳಿಸಿ ತೂಕಡಿಸಿದರು ಮರಳಿ
ಕೆಲಕೆಲಬರರೆ ನಿದ್ರೆಗಳ ಕಳ
ವಳಿಗರೊರೆಗಳ ಕೊಂಡಡಾಯ್ದವ
ನೆಲಕೆ ಬಿಸುಟರು ಬತ್ತಳಿಕೆಯಲಿ ಹೂಡಿದರು ಧನುವ ೩೭

ಗಜವ ಹಲ್ಲಣಿಸಿದರು ವಾಜಿ
ವ್ರಜಕೆ ರೆಂಚೆಯ ಹಾಯ್ಕಿದರು ಗಜ
ಬಜವಿದೇನೇನುತ ಗಾಲಿಗೆ ಬಿಗಿದು ಕುದುರೆಗಳ
ರಜನಿ ಬಂದುದೆ ಹಗಲು ಹೋಯಿತೆ
ಗಜಬಜದೊಳಕಟೆನುತ ಸುಭಟ
ವ್ರಜಸುವಿಹ್ವಳಕರಣರಿರಿದಾಡಿದರು ತಮ್ಮೊಳಗೆ ೩೮

ಲಾಯದಲಿ ಹೊಕ್ಕಿರಿದು ಕುದುರೆಯ
ಬೀಯ ಮಾಡಿದನಂತಕಂಗೆಯ
ಡಾಯುಧದ ಧಾರೆಯಲಿ ಕೊಟ್ಟನು ಕುಂಜರವ್ರಜವ
ರಾಯದಳ ಧರೆಯಂತೆ ನವಖಂ
ಡಾಯಮಾನವಿದಾಯ್ತು ಪಾಂಡವ
ರಾಯ ಕಟಕವ ಕೊಂದನಶ್ವತ್ಥಾಮ ಬೇಸರದೆ ೩೯

ದೊರೆಗಳೇನಾದರೊ ಯುಧಿಷ್ಠಿರ
ನರ ವೃಕೋದರ ನಕುಲ ಸಹದೇ
ವರು ಮುರಾಂತಕ ಸಾತ್ಯಕಿಗಳೊಳಗಿಹರೆ ರೌರವಕೆ
ಹರನ ಖತಿಯೋ ಲಯಂಕೃತಾಂತನ
ವಿರಸಕೃತಿಯೋ ಸರ್ವದಳಸಂ
ಹರಣಕೇನು ನಿಮಿತ್ತವೆಂದುದು ಭೂಸುರವ್ರಾತ ೪೦

ಉಳಿದುದೇಳಕ್ಷೋಹಿಣೀದಳ
ದೊಳಗೆ ನಾರೀನಿಕರ ವಿಪ್ರಾ
ವಳಿ ಕುಶೀಲವ ಸೂತ ಮಾಗಧ ವಂದಿಸಂದೋಹ
ಸುಳಿವ ಕಾಣೆನು ಕೈದುವಿಡಿದರ
ನುಳಿದು ಜೀವಿಸಿದಾನೆ ಕುದುರೆಗ
ಳೊಳಗೆ ಜವಿಯಿಲ್ಲೇನನಂಬೆನು ಜನಪ ಕೇಳೆಂದ ೪೧

ಕೂಡೆ ಕಟ್ಟಿತು ಕಿಚ್ಚು ತೆರಪಿನ
ಲೋಡುವಡೆ ಗುರುಸುತನ ಶರ ಮಿಂ
ಕ್ಕೋಡುವಡೆ ಬಾಗಿಲುಗಳಲಿ ಕೃತವರ್ಮ ಕೃಪರೆಸುಗೆ
ಕೂಡೆ ಮುಮ್ಮಳಿಯೋದುದೀ ಶರ
ಝಾಡಿಯಲಿ ಚತುರಂಗಬಲವ
ಕ್ಕಾಡಿತೇನೆಂಬೆನು ಯುಧಿಷ್ಠಿರನೃಪನ ಪರಿವಾರ ೪೨

ಬಸಿವ ರಕುತದಡಾಯುಧದ ನೆಣ
ವಸೆಯ ತೊಂಗಲುಗರುಳ ಬಂಧದ
ವಸನ ಕೈಮೈಗಳ ಕಠೋರಭ್ರುಕುಟಿ ಭೀಷಣದ
ಮುಸುಡ ಹೊಗರಿನ ದಂತದಂಶಿತ
ದಶನವಾಸದ ವೈರಿಹಿಂಸಾ
ವ್ಯಸನ ವೀರಾವೇಶಿ ಬಂದನು ಕೃಪನ ಸಮ್ಮುಖಕೆ ೪೩

ಹೇಳಿದನು ಸೃಂಜಯವಧೆಯ ಪಾಂ
ಚಾಲ ರಾಜಕುಮಾರವರ್ಗದ
ಮೌಳಿಗಳ ಬಲಿಗೊಟ್ಟ ಪರಿಯನು ಖಡ್ಗಪೂತನಿಗೆ
ಪಾಳೆಯದೊಳರಸಿದೆನು ಪಾಂಡುನೃ
ಪಾಲತನುಜರನವರು ಕೆಡುವರೆ
ಮೇಲುಗಾಹಿನ ವೀರನಾರಾಯಣನ ಕರುಣದಲಿ ೪೪

ಹತ್ತನೆಯ ಸಂಧಿ

ಸೂ ರಾಯಕಟಕವನಿರಿದ ಗುರುಸುತ
ನಾಯುಧದ ವಿಗ್ರಹದೊಳಗೆ ಹರಿ
ಕಾಯಿದನು ಕೃಪೆಯಿಂದಲಭಿಮನ್ಯುವಿನ ನಂದನನ

ಕೇಳು ಧೃತರಾಷ್ಟ್ರಾವನಿಪ ರಿಪು
ಜಾಲಗೀರ್ವಾಣೇ ಕದಂಬ
ಸ್ಥೂಲವಕ್ಷನು ಬಂದು ಕಂಡನು ಭೋಜಗೌತಮರ
ಲೀಲೆಯಲಿ ರಥವೇರಿ ಕುರುಭೂ
ಪಾಲನಲ್ಲಿಗೆ ಬಂದರುಬ್ಬಿನ
ಮೇಲುಮದದ ಜಯಪ್ರಚಂಡರು ಕಂಡರವನಿಪನ ೧

ಬಲಿದ ಮರವೆಯ ಕರಣವೃತ್ತಿಯ
ಕಳವಳದ ಪಂಚೇಂದ್ರಿಯದ ಪರಿ
ಚಲನಸಂಚದ ಶಿಥಿಲಮೂಲಾಧಾರಮಾರುತನ
ಅಲಘುತರಪರಿವೇದನಾವಿ
ಹ್ವಳಿತಕಂಠಗತಾತ್ಮನೂರ್ಧ್ವ
ಸ್ಖಲಿತ ದೀರ್ಘಶ್ವಾಸನಿದ್ದನು ಕೌರವರ ರಾಯ ೨

ಕಂಡು ಕಂಬನಿದುಂಬಿದರು ಭೂ
ಮಂಡಲಾಧಿಪ ವೈರಿಮದವೇ
ತಂಡ ಕೇಸರಿಯಿರವಿದೇ ಮಝು ಪೂತುವಿಧಿಯೆನುತ
ಗಂಡುಗಲಿಯವಧಾನರಿಪುಬಲ
ದಂಡಧರನವಧಾನ ಕುರುಕುಲ
ಚಂಡಕರನವಧಾನವೆನುತೆಚ್ಚರಿಸಿದನು ನೃಪನ ೩

ಕೆದರಿದುದು ಕುಡಿನೋಟ ಕರಣದ
ಕದಡು ಹರೆದುದು ಇಂದ್ರಿಯಾವಳಿ
ತುಂದಿಗೊಳಿಸಿದುದು ಪವನ ನಟಿಸಿತು ನಾಭಿಪರಿಯಂತ
ವದನವನು ನಸು ನೆಗಹಿ ನೃಪ ನುಡಿ
ಸಿದನಿದಾರಸ್ಮತ್ಪುರೋಭಾ
ಗದಲಿ ಸೇವಾಮಧುರವಚನವಿಳಾಸಪರರೆಂದ ೪

ನಾವು ನಿಮ್ಮವರೆಮ್ಮ ಬೊಪ್ಪನ
ಭಾವ ಕೃಪ ಕೃತವರ್ಮನೀತನು
ದೇವರವಧರಿಸುವುದು ರಜನಿಯ ರಾಜಕಾರಿಯವ
ನೀವು ಬಿನ್ನಹಮಾಡಬೇಹುದು
ಮಾವ ರಣಸಂಗತಿಯನಾತ್ಮ
ಸ್ತಾವಕರು ನಾವಲ್ಲವೆಂದನು ಕೃಪಗೆ ಗುರುಸೂನು ೫

ಏನನೆಂಬೆನು ಜೀಯ ದ್ರುಪದನ
ಸೂನು ಪಂಚದ್ರೌಪದೇಯರ
ಹಾನಿಯನು ಸೃಂಜಯ ಶಿಖಂಡಿ ಪ್ರಮುಖರುಪಹತಿಯ
ವೈನತೇಯನ ಲಳಿಯಲಹಿಕುಲ
ವಾನುವುದೆ ಪಾಂಚಾಲಕದಳೀ
ಕಾನನವ ನಿನ್ನಾನೆ ಸವರಿತು ಹೇಳಲೇನೆಂದ ೬

ದೈವಕೃಪೆಜವನಿಕೆಯ ಮರೆಗೊಂ
ಡೈವರುಳಿದರು ಮೇಲೆ ಸಾತ್ಯಕಿ
ದೈವದೊಡಹುಟ್ಟಿದನಲೇ ತಾನಿಲ್ಲ ಶಿಬಿರದಲಿ
ದೈವಬಲವಿನಿತಕ್ಕೆ ಕೇಳ್ ನಿ
ರ್ದೈವಬಲನಿಶ್ಶೇಷವಿನಿತೇ
ದೈವವೆತ್ತಿದ ಛಲದ ವಾಸಿಗೆ ರಾಯ ಕೇಳೆಂದ ೭

ಎಲೆ ಕೃಪಾಚಾರಿಯ ವಿರೋಧಿಗ
ಳುಳಿದರೈವರು ಬಲ್ಲೆನದನಸ
ದಳದ ಕೃಪೆಯಲಿ ಬಸಿದು ಬೀಳುವನವರಿಗಸುರಾರಿ
ಅಳಿದುದೇ ನಿಶ್ಶೇಷ ಪಾಂಡವ
ದಳ ಕುಮಾರರು ಸಹಿತವಿನ್ನ
ಗ್ಗಳೆಯನಶ್ವತ್ಥಾಮನಹನೆಂದನು ಮಹೀಪಾಲ ೮

ಏನನೊದಗಿದ ನಮಗೆ ಗಂಗಾ
ಸೂನು ಭಾರದ್ವಾಜ ನಮಗೊಲಿ
ದೇನ ಮಾಡಿದ ನಮ್ಮ ಥಟ್ಟಿನ ಭದ್ರಗಜವೆಂಬ
ಮಾನನಿಧಿ ರಾಧಾತನುಜನಿಂ
ದೇನು ಹರಿದುದು ಹರಿಬವನು ಗುರು
ಸೂನುವೇ ಮರಳಿಚಿದನೆಂದನು ಕೌರವರರಾಯ ೯

ಹರಿಬ ಬಂದುದೆ ಪಾಂಡುಸುತರುಳಿ
ದಿರಲಿ ಸಾಕಂತಿರಲಿ ನಿಮ್ಮಡಿ
ಪುರಕೆ ಬಿಜಯಂಗೆಯ್ಯಿರೇ ಚೈತನ್ಯಗತಿಯೆಂತು
ಹರಣವುಳಿದಡೆ ಪಾಂಡುತನುಜರ
ಶಿರವ ಕೇವಣಿಸುವೆನಲ್ಯೆ ಕೇ
ಸರಿಯ ಪೀಠದೊಳೆಂದನಶ್ವತ್ಥಾಮ ಕೈಮುಗಿದು ೧೦

ಸಾಕದಂತಿರಲಿನ್ನು ವೈರಿ
ವ್ಯಾಕರಣಪಾಂಡಿತ್ಯದಲ್ಲಿ ವಿ
ವೇಕಶೂನ್ಯರು ನಾವು ಮೊದಲಾದೌರ್ಧ್ವದೈಹಿಕವ
ಆಳೆವಾಳರಿಗರುಹಿ ನೀವ
ಸ್ತೋಕಪುಣ್ಯರ ತಿಳುಹಿ ವಿಗಳಿತ
ಶೋಕರೆನಿಸುವುದಂಧನೃಪ ಗಾಂಧಾರಿದೇವಿಯರ ೧೧

ಎನುತ ಕಣ್ ಮುಚ್ಚಿದನು ಜೀವಾ
ತ್ಮನು ಜವಾಯಿಲತನದಲೊಡೆಹಾ
ಯ್ದನು ಸುನಾಸಾಲಂಬಿತಶ್ವಾಸದ ಸಮಾಪ್ತಿಯಲಿ
ಜನಪ ಮರೆದೊರಗಿದನಲಾ ಹಾ
ಯೆನುತ ವದನಾಂಜುಳಿಪುಟದ ತಾ
ಡನದಲಿವರಳಲಿದರು ಕುರುರಾಜಾವಸಾನದಲಿ ೧೨

ತಿರುಗಿದರು ಕೈದುವ ಬಿಸುಟು ಮೂ
ವರು ಮಹಾರಥರಂಧತಿಮಿರಕೆ
ತರಣಿಕಿರಣದ ಧಾಳಿ ಹರಿದುದು ಕೂಡೆ ದೆಸೆದೆಸೆಗೆ
ಅರಸನುಪ್ಪವಡಿಸಿ ಮುರಾರಿಯ
ಸಿರಿಮೊಗವ ನೋಡಿದನು ತಮ್ಮಂ
ದಿರು ಸಹಿತ ಹೊರವಂಟನಾ ಕುರುಪತಿಯ ಪಾಳೆಯವ ೧೩

ಪಾಳೆಯದಲಿ ಕುಮಾರರನು ಪಾಂ
ಚಾಲರನು ನೋಡುವೆವೆನುತ ಭೂ
ಪಾಲ ನಡೆತರಲಿದಿರುವಂದುದು ಯುವತಿನಿಕುರುಂಬ
ಸೂಳುವೊಯ್ಲಿನ ತೆಳುವಸುರ ಕರ
ತಾಳದಲಿ ಹಾಹಾವಿರಾವದ
ಮೇಳವದ ಗೀತದಲಿ ಬಂದಳು ದ್ರೌಪದೀದೇವಿ ೧೪

ಏನಿದೇನದ್ಭುತವೆನುತ ದು
ಮ್ಮಾನದಲಿ ಹರಿತಂದು ಹಿಡಿದನು
ಮಾನಿನಿಯ ಕೈಗಳನು ಕಂಬನಿದೊಡೆದು ಸೆರಗಿನಲಿ
ಹಾನಿಯೇನೆನೆ ಮಡಿದರೆನ್ನಯ
ಸೂನುಗಳು ತನ್ನನುಜರೆನೆ ಪವ
ಮಾನಸುತ ಕೇಳಿದನು ಕೋಳಾಹಳವ ಗುರುಸುತನ ೧೫

ಸುತರ ತಲೆಯೈದಕ್ಕೆ ರಿಪುಗುರು
ಸುತನ ತಲೆಯೇ ಹೊಣೆ ಕಣಾ ಬಿಡು
ಸತಿಯೆ ಶೋಕವನೆನುತ ಬಿಟ್ಟನು ಸೂಠಿಯಲಿ ರಥವ
ವ್ಯತಿಕರವಿದವಗಡ ಸಮೀರನ
ಸುತಗೆ ಹರಿಯದು ಬವರ ನಡೆಯೆಂ
ದತಿರಥನ ಬಳಿಸಲಿಸಿದರು ನೃಪ ಹರಿ ಧನಂಜಯರು ೧೬

ನಿಲ್ಲು ಗುರುಸುತ ಶೌರ‍್ಯಪಣ ನ
ಮ್ಮಲ್ಲಿಯೇ ಹುಲುಜೀವರಿಗೆ ಜವ
ನಲ್ಲಿ ಮೇಳವೆ ಉಗುಳು ಪಂಚದ್ರೌಪದೀಸುತರ
ಬಿಲ್ಲ ಗುರು ನೀನಾದಡೆಮಗೇ
ನಿಲ್ಲಿ ದ್ರೌಪದಿಯಕ್ಷಿಜಲಕೃಪೆ
ಯಲ್ಲಿ ಲಂಬಿಸಬೇಕೆನುತ ಮೂದಲಿಸಿದನು ಭೀಮ ೧೭

ಎಲವೊ ಶರಸಂನ್ಯಾಸವನು ಕುರು
ತಿಲಕನವಸಾನದಲಿ ಮಾಡಿದೆ
ನಳಲಿದಡೆ ಫಲವೇನು ನಮ್ಮಾ ಸ್ವಾಮಿ ಕಾರ‍್ಯದಲಿ
ತಲೆಯ ಹೊಯ್ದೆನು ನಿನ್ನವರ ನೀ
ವಳುಕಿ ರಣದೊಳಗಡಗಿ ಜೀವವ
ನುಳುಹಿಕೊಂಡಿರಿ ಕೊಲುವೆನಲ್ಲದೊಡೆಂದನಾ ದ್ರೌಣಿ ೧೮

ಮರುಳಲಾ ಗುರುಸುತ ಯುಧಿಷ್ಠಿರ
ನಿರೆ ವಿಭಾಡಿಸುವಾ ಮೃಗೇಂದ್ರನ
ಗರವಟಿಗೆಯಲಿ ಬಡಸೃಗಾಲನ ಬಾಧೆ ಬಲುಹು ಗಡಾ
ಕುರುನೃಪತಿಯಾಸ್ಥಾನವಲ್ಲು
ಬ್ಬರಿಸಿ ಬೊಬ್ಬಿಡಲಾಹವಾಂತ
ಸ್ಸರಣೆ ಗುರುಸುತ ನಿನಗೆ ಸದರವೆಯೆಂದನಸುರಾರಿ ೧೯

ಕಾಯುಬಲ್ಲೈ ಪಾಂಡವರನು ನಿ
ರಾಯುಧರು ನಾವೆಂದು ನೀ ನಿ
ರ್ದಾಯದಲಿ ನಿನ್ನವರು ಹೊಗುವರೆ ಹಸ್ತಿನಾಪುರವ
ಸಾಯಕವ ಪರಿಹರಿಸು ಪಾಂಡವ
ರಾಯಜೀವಿ ಗಡೆನುತ ವರ ಚ
ಕ್ರಾಯುಧನ ಬೋಳೈಸಿ ತೃಣದಿಂದಿಟ್ಟನಾ ದ್ರೌಣಿ ೨೦

ಆ ಮಹಾಮಂತ್ರಾಭಿಮಂತ್ರಿತ
ಭೀಮವಿಕ್ರಮತೃಣವನಶ್ವ
ತ್ಥಾಮನಿಡೆ ಲೋಕತ್ರಯಕ್ಷೋಭಪ್ರಭಂಜನವ
ವ್ಯೋಮಕೇಶಲಲಾಟ ವಿಶ್ರುತ
ಧೂಮಕೇತುಶಿಖಾವಿಸಂಸ್ಥುಳ
ಧೂಮಚುಂಬಿತ ಖಚರಚಯ ಭೋರಿಸಿತು ರಿಪುನೃಪರ ೨೧

ಅವನಿಪತಿ ಕೇಳೈ ಮಹಾವೈ
ಷ್ಣವದ ಸತ್ರಾಣವನು ಗುರುಸಂ
ಭವನ ಮಂತ್ರದ ಪಾಡಿ ನಡಪಾಡಿಸಿತು ಪಾಂಡವರ
ತವಕದಲಿ ತೃಣಬಾಣವಭಿಮ
ನ್ಯುವಿನ ರಾಣೀವಾಸದುದರೋ
ದ್ಭವದ ಗರ್ಭಕೆ ಮುರಿದು ಹರಿದುದು ಸೂಕ್ಷ್ಮರೂಪದಲಿ ೨೨

ಜಗವ ಹೂಡುವ ವೇಣ್ ಚತುರ್ದಶ
ಜಗದ ಜೀವರನೂಡಿಯುಣಿಸುವ
ಜಗವನಂತರ್ಭಾವದಲಿ ಬಲಿಸುವ ಗುಣತ್ರಯದ
ಸೊಗಡು ತನ್ನ ಸಹಸ್ರಧಾರೆಯ
ಝುಗೆಯೊಳೆನಿಪ ಮಹಾಸುದರ್ಶನ
ಬಿಗಿದು ಸುತ್ತಲು ವೇಢೆಯಾಯ್ತುತ್ತರೆಯ ಗರ್ಭದಲಿ ೨೩

ಸೆಳೆದುಕೊಂಡನು ಮಿತ್ತುವಿನ ಗಂ
ಟಲಲಿ ಮಾರ್ಕಂಡೇಯನನು ರಣ
ದೊಳಗೆ ಭಗದತ್ತಾಂಕುಶದಿ ನಾರಾಯಣಾಸ್ತ್ರದಲಿ
ಉಳುಹಿದನು ಪಾರ್ಥನನು ಗುರುಸುತ
ಕಳುಪಿದೀ ಕುಶಿಕಾಸ್ತ್ರದಲಿ ಶಶಿ
ಕುಲದ ರಾಜಾಂಕುರವ ಕರುಣಿಸಿ ಕಾಯ್ದನಸುರಾರಿ ೨೪

ತೀರಿತೈ ಕುಶಿಕಾಸ್ತ್ರಘಾತಿ ಮು
ರಾರಿ ಗುರುಸುತರೊಬ್ಬರೊಬ್ಬರ
ವೀರಪಣವಾಸಿಯಲಿ ಶಪಿಸಿದರಧಿಕರೋಷದಲಿ
ನಾರಿಯಂತಸ್ತಾಪವಹ್ನಿ ನಿ
ವಾರಣಕೆ ಜಲವೀತನೆಂದಾ
ಚಾರಿಯನ ನಂದನನ ಹಿಡಿದರು ಭೀಮಫಲುಗುಣರು ೨೫

ಬಂದಳಾ ದ್ರೌಪದಿಯಹಹ ಗುರು
ನಂದನನ ಕೊಲಬಾರದಕಟೀ
ನಂದನರ ಮರಣದ ಮಹಾವ್ಯಥೆಯೀತನಳಿವಿನಲಿ
ಕೊಂದುಕೂಗದೆ ಕೃಪೆಯುನಬಲಾ
ವೃಂದ ಸಮಸುಖದುಃಖಿಗಳು ಸಾ
ರೆಂದು ಭೀಮಾರ್ಜುನರ ತೆಗೆದಳು ಬಳಿಕ ಪಾಂಚಾಲಿ ೨೬

ತಲೆಯ ಕೊಂಬವಗಡದ ಭಾಷೆಯ
ಸಲಿಸಲೆಂದಾ ದ್ರೋಣತನುಜನ
ಹೊಳೆವ ಮಕುಟದ ಮಾಣಿಕವ ಕೊಂಡುತ್ತರಾಯದಲಿ
ಗೆಲಿದು ತಿರುಗಿದರಿವರು ಸಾಹಸ
ವಳುಕಿಸದೆ ಮೂಜಗವ ಯದುಕುಲ
ತಿಲಕ ಗದುಗಿನ ವೀರನಾರಾಯಣನ ಕರುಣದಲಿ ೨೭

ಹನ್ನೊಂದನೆಯ ಸಂಧಿ

ಸೂ. ರಾಯನಯ್ಯನ ತಿಳುಹಿದನು ದ್ವೈ
ಪಾಯನನು ಸಾಮದಲಿ ಕಮಳದ
ಳಾಯತಾಕ್ಷಿಯು ಶಾಪವಿತ್ತಳು ಮುಳಿದು ಗಾಂಧಾರಿ

ಕೇಳು ಜನಮೇಜಯ ಧರಿತ್ರೀ
ಪಾಲ ಕುರುಪತಿ ವಿಳಯವಾರ್ತಾ
ವ್ಯಾಳವಿಷ ವೇಢೈಸಿದುದು ಗಜಪುರದ ಜನಮನವ
ಹೂಳಿದುಬ್ಬಿನ ಹುದಿದ ಮೋನದ
ಸೂಳು ಚಿಂತೆಯ ಬಲಿದ ಭೀತಿಯ
ಮೇಲುದುಗುಡದ ದಡಿಯ ವದನದಲಿದ್ದುದಖಿಳಜನ ೧

ಆ ಸಮಯದಲಿ ದೇವ ವೇದ
ವ್ಯಾಸಮುನಿ ಬಂದನು ಗತಾಕ್ಷಮ
ಹೀಶನನು ಚರಣದಲಿ ಹೊರಳಿದಡೆತ್ತಿದನು ಹಿಡಿದು
ಆ ಸತಿಯ ಕರಸಿದನು ರಾಣೀ
ವಾಸವೆಲ್ಲವ ಬರಿಸಿ ಧರ್ಮವಿ
ಲಾಸವನು ವಿಸ್ತರಿಸಿದನು ವೈದಿಕ ವಿಧಾನದಲಿ ೨

ನಿನ್ನ ಸುತನುದ್ದಂಡತನದಲಿ
ನಿನ್ನ ತಮ್ಮನ ತನುಜರನು ಪರಿ
ಖಿನ್ನರನು ಮಾಡಿದನು ಕಪಟದ್ಯೂತಕೇಳಿಯಲಿ
ನಿನ್ನ ಮತ ವಿದುರೋಕ್ತಿಗಳ ಮೇಣ್
ಮನ್ನಿಸಿದನೇ ಜಗವರಿಯೆ ಸಂ
ಪನ್ನ ಶಠನಹನೈ ಸುಯೋಧನನೆಂದನಾ ಮುನಿಪ ೩

ಸೈರಿಸಿದರೇ ಪಾಂಡುಸುತರಂ
ಭೋರುಹಾಕ್ಷಿ ರಜಸ್ವಲೆಯ ಸುಲಿ
ಸೀರೆಯಲಿ ತತ್ಪೂರ್ವಕೃತ ಜತುಗೇಹದಾಹದಲಿ
ವೈರಬಂಧದ ವಿವಿಧ ವಿಷಮ ವಿ
ಕಾರದಲಿ ವಿಗ್ರಹಮುಖವ ವಿ
ಸ್ತಾರಿಸಿದರೇ ಪಾಂಡುಸುತರುತ್ತಮರೆ ಹೇಳೆಂದ ೪

ಅವರು ಸುಚರಿತರೆಂದಲೇ ಮಾ
ಧವನು ನೆರೆ ಮರುಳಾದನವರಿಗೆ
ಶಿವನು ಮೆಚ್ಚಿದು ಶರವನಿತ್ತನು ನರನ ಪತಿಕರಿಸಿ
ಭುವನವೆರಡಾದಲ್ಲಿ ಸಾಧುಗ
ಳವರ ದೆಸೆ ದುಸ್ಸಾಧುಗಳು ನಿ
ನ್ನವರ ದೆಸೆಯಾಯ್ತರ್ಜುನನ ಸೂತಜನ ಸಮರದಲಿ ೫

ಅಹುದು ನಿಮ್ಮ ಯುಧಿಷ್ಠಿರನು ಗುಣಿ
ಯಹನು ಭೀಮಾರ್ಜುನರು ಬಲ್ಲಿದ
ರಹರು ಕೃಷ್ಣನ ಕೂರ್ಮೆಯಲ್ಲಿ ಕಪರ್ದಿಯೊಲವಿನಲಿ
ಕುಹಕಿಯೆನ್ನವನವನೊಳಗೆ ನಿ
ಸ್ಪೃಹರು ವಿದುರಪ್ರಮುಖ ಸುಜನರು
ವಿಹಿತವೆನಗಿನ್ನಾವುದದ ನೀವ್ ಬೆಸಸಿ ಸಾಕೆಂದ ೬

ಧರ್ಮವೆಲ್ಲಿಹುದಲ್ಲಿ ಜಯ ಸ
ತ್ಕರ್ಮವೆಲ್ಲಿಹುದಲ್ಲಿ ಸಿರಿ ಸ
ದ್ಧರ್ಮಸಂರಕ್ಷಕರು ಹರಿ ಧೂರ್ಜಟಿ ಪಿತಾಮಹರು
ಧರ್ಮದೂರನು ನಿನ್ನವನು ಸ
ತ್ಕರ್ಮಬಾಹಿರನಾತ್ಮರಚಿತ ವಿ
ಕರ್ಮದೋಷದಲಳಿದನಿನ್ನೇನೆಂದನಾ ಮುನಿಪ ೭

ಎನಲು ಬಿದ್ದನು ನೆಲಕೆ ಸಿಂಹಾ
ಸನದಿನಾ ಮುನಿವಚನಶರ ಮರು
ಮೊನೆಗೆ ಬಂದುದು ಬಹಳ ಮೂರ್ಛಾಪಾರವಶ್ಯದಲಿ
ಜನಪನಿರೆ ಗಾಂಧಾರಿ ನೃಪ ಮಾ
ನಿನಿಯರೊರಲಿತು ರಾಜಗೃಹ ರೋ
ದನ ಮಹಾಧ್ವನಿ ಮೀರಿ ಮೊಗೆದುದು ಹಸ್ತಿನಾಪುರವ ೮

ಆರು ಸಂತೈಸುವರು ಲೋಚನ
ವಾರಿ ಹೊನಲಾಯ್ತರಮನೆಯ ನೃಪ
ನಾರಿಯರ ಬಹಳ ಪ್ರಳಾಪ ವ್ಯಥೆಯ ಬೇಳುವೆಗೆ
ಆರು ಮರುಗರು ಶೋಕಪನ್ನಗ
ಘೋರವಿಷ ಮುನಿವರನ ಹೃದಯವ
ಗೋರಿತೇನೆಂಬೆನು ಲತಾಂಗಿಯರಳಲ ಕಳವಳವ ೯

ಎತ್ತಿದರು ಧರಣಿಪನ ಕಂಗಳೊ
ಳೊತ್ತಿದರು ಪನ್ನೀರನುಸುರಿನ
ತತ್ತಳವನಾರೈದರೊಯ್ಯನೆ ತಾಳವೃಂತದಲಿ
ಬಿತ್ತಿ ತಂಗಾಳಿಯನು ಶೋಕದ
ಹತ್ತಿಗೆಗೆ ಹೊರೆದೆಗೆದು ಮರವೆಯ
ಚಿತ್ತವನು ಚೇತರಿಸಿ ಮೆಲ್ಲನೆ ನುಡಿಸಿದನು ಮುನಿಪ ೧೦

ಏನನೆಂದೆವು ಹಿಂದೆ ಧರ್ಮ ನಿ
ಧಾನವನು ಕಯ್ಯೊಡನೆ ಮರೆದೆಯಿ
ದೇನು ನಿನ್ನಯ ಮತಿಯ ವಿಭ್ರಮೆ ನಮ್ಮ ಹೇಳಿಕೆಗೆ
ಭಾನುಮತಿಯನು ತಿಳುಹು ನಿನ್ನಯ
ಮಾನಿನಿಯ ಸಂತೈಸು ಸಂಸಾ
ರಾನುಗತಿ ತಾನಿದು ಚತುರ್ದಶ ಜಗದ ಜೀವರಿಗೆ ೧೧

ಬಹ ವಿಪತ್ತಿನ ಶರಕೆ ಜೋಡೆಂ
ದಿಹುದಲಾ ಸುವಿವೇಕಗತಿ ನಿ
ರ್ದಹಿಸದೇ ಶೋಕಾಗ್ನಿ ಧರ್ಮದ್ರುಮದ ಬೇರುಗಳ
ಅಹಿತರೇ ಜನಿಸಿದಡೆ ಸುತರೆನ
ಬಹುದೆ ದುರ್ಯೋಧನನು ಹಗೆ ನಿನ
ಗಿಹಪರದ ಸುಖಗತಿಗೆ ಸಾಧನ ಧರ್ಮಸುತನೆಂದ ೧೨

ಕೇಳು ಮುನಿಭಾಷಿತವ ನೃಪ ನೀ
ನಾಲಿಸುವುದಾತ್ಮಜರನಿಲ್ಲಿಂ
ಮೇಲೆ ಸಲಿಲಾಂಜಲಿಗಳನು ವೈದಿಕವಿಧಾನದಲಿ
ಪಾಲಿಸುವುದಾ ಪಾಂಡುಸುತರ ಸ
ಮೇಳದಲಿ ಸೇರುವುದು ಚಿತ್ತಕೆ
ತಾಳದಿರು ರಾಜಸ ವಿಕಾರವನೆಂದನಾ ವಿದುರ ೧೩

ತಾಯೆ ಹದುಳಿಸು ದೇವಲೋಕದ
ಲಾಯದಲಿ ಸಲಿಸಾ ಕುಮಾರರ
ನಾಯುಷದ ಲಿಪಿ ಹಣೆಯಲೊರಸಿದಡಾರ ವಶವಿದಕೆ
ರಾಯನಲಿ ಸೊಸೆಯರಿಗೆ ಮಿಕ್ಕಬು
ಜಾಯತಾಕ್ಷಿಯರಿಗೆ ವಿಶೋಕದ
ಬಾಯಿನವ ಕೊಡಿಸೆಂದನಾ ಮುನಿ ಸುಬಲನಂದನೆಗೆ ೧೪

ಧರಣಿಪತಿ ಹೊರವಂಟನಂತಃ
ಪುರವ ಬಿಸುಟರು ಭಾನುಮತಿ ಸಹಿ
ತರಸಿಯರು ಹೊರವಂಟರೇಕಾಂಬರದ ಬಿಡುಮುಡಿಯ
ಕರದಬಸುರಿನ ಹೊಯ್ಲ ಕಜ್ಜಳ
ಪರಿಲುಳಿತ ನಯನಾಂಬುಗಳ ಕಾ
ತರಿಪ ಕಮಲಾಕ್ಷಿಯರು ನೆರೆದುದು ಲಕ್ಕ ಸಂಖ್ಯೆಯಲಿ ೧೫

ವಣಿಜಸತಿಯರ ಶಿಲ್ಪಜನವುಪ
ವಣಿಜದಬಲಾಜನವಘಾಟದ
ಗಣಿಕೆಯರು ನಾನಾದಿಗಂತದ ರಾಜಪತ್ನಿಯರು
ಹಿಣಿಲ ಕಬರಿಯ ಹೊಳೆವ ಮುಂದಲೆ
ವಣಿಯ ಮುಕುರ ಮುಖಾಂಬುಜದ ಪದ
ರಝಣಝಣತ್ಕೃತಿ ಜಡಿಯೆ ನಡೆದುದು ಬೀದಿಬೀದಿಯಲಿ ೧೬

ಎಸಳುಗಂಗಳ ಬೆಳಗನಶ್ರು
ಪ್ರಸರ ತಡೆದುದು ಶೋಕಮಯಶಿಖಿ
ಮುಸುಡಕಾಂತಿಯ ಕುಡಿದುದೊಸರುವ ಬಿಸಿಲ ಬೇಗೆಗಳು
ಮಿಸುಪ ಲಾವಣ್ಯಾಂಬುವನು ಬ
ತ್ತಿಸಿದವಂಗುಲಿಯುಪಹತಿಯ ಕೇ
ಣಸರ ಸೆಳೆದುದು ಕುಚದ ಚೆಲುವನು ಕೋಮಲಾಂಗಿಯರ ೧೭

ತಮ್ಮೊಳೇಕತ್ವದ ಸಖಿತ್ವದ
ಸೊಮ್ಮಿನಲಿ ಶ್ರುತಿಯಶ್ರುಜಲವನು
ನಿರ್ಮಿಸಿದವೆನೆ ಕರ್ಣಪೂರದ ಮುತ್ತು ಸೂಸಿದವು
ನೆಮ್ಮಿತತಿಶಯ ಶೋಕವಹ್ನಿಯ
ರೊಮ್ಮಗೆಯ ಕರಣಂಗಳಲಿ ನೃಪ
ಧರ್ಮಪತ್ನಿಯರಳುತ ಹೊರವಂಟರು ಪುರಾಂತರವ ೧೮

ಉಡಿದು ಬಿದ್ದವು ಸೂಡಗವು ಬಿಗು
ಹಡಗಿ ಕಳೆದವು ತೋಳ ಬಂದಿಗ
ಳೊಡನೊಡನೆ ಚೆಲ್ಲಿದವು ಮುತ್ತಿನ ಹಾರಚಯ ಹರಿದು
ಬಿಡುಮುಡಿಯ ಕಡುತಿಮಿರ ಕಾರಿದು
ದುಡುಗಣವನೆನೆ ಸೂಸಕದ ಮು
ತ್ತುಡಿಸಿ ಸುರಿದವು ನೆಲಕೆ ನೃಪವನಿತಾಕದಂಬದಲಿ ೧೯

ಗಾಳಿಯರಿಯದು ಮುನ್ನ ರವಿಕಿರ
ಣಾಳಿ ಸೋಂಕದಪೂರ್ವ ರೂಪಿನ
ಮೇಲೆ ಬೀಳುವವೆಂಬವೊಲು ಕಡುವಿಸಿಲು ಬಿರುಗಾಳಿ
ತೂಳಿದವು ತರುಣಿಯರನಾವವ
ರಾಲಿಯರಿಯದ ನೆಲೆಯನಾ ಚಾಂ
ಡಾಲಜನ ಪರಿಯಂತ ಕಂಡುದು ರಾಯ ರಾಣಿಯರ ೨೦

ಅರಸ ಚಿತ್ತೈಸವರು ಹಸ್ತಿನ
ಪುರವ ಹೊರವಡೆ ದೂರದಲಿ ಕೃಪ
ಗುರುಜ ಕೃತವರ್ಮಕರು ಕಂಡರು ಕೌರವೇಶ್ವರನ
ಅರಸಿಯರ ನಾನಾದಿಗಂತದ
ಧರಣಿಪರ ಭಗದತ್ತ ಮಾದ್ರೇ
ಶ್ವರ ಜಯದ್ರಥ ಕರ್ಣ ದುಶ್ಶಾಸನರ ರಾಣಿಯರ ೨೧

ಗಣಿಕೆಯರನೇಕಾದಶಾಕ್ಷೋ
ಹಿಣಿಯ ನೃಪರಾಣಿಯರನಾ ಪ
ಟ್ಟಣ ಜನದ ಪರಿಜನದ ಬಹುಕಾಂತಾ ಕದಂಬಕವ
ರಣಮಹೀದರುಶನಕೆ ಬಹು ಸಂ
ದಣಿಯ ಕಂಡರು ಧರ್ಮಸುತನಿ
ನ್ನುಣಲಿ ಧರಣಿಯನೆಂದು ಸುಯ್ದರು ಬಯ್ದು ಕಮಲಜನ ೨೨

ಬಂದ ಧೃತರಾಷ್ಟ್ರಾವನೀಶನ
ಮುಂದೆ ನಿಂದರು ರಾಯಕಟಕವ
ಕೊಂದ ರಜನಿಯ ರಹವನಭಿವರ್ಣಿಸಿದರರಸಂಗೆ
ಸಂದುದೇ ಛಲವೆನ್ನ ಮಗನೇ
ನೆಂದನೈ ಹರಿಬದಲಿ ಹರುಷವ
ತಂದಿರೈ ತಮಗಿನ್ನು ಲೇಸಾಯ್ತೆಂದನಂಧನೃಪ ೨೩

ಪತಿಕರಿಸಿದನು ನಮ್ಮನಹಿತ
ಸ್ಥಿತಿಯನೆಲ್ಲವ ತಿಳಿದನಮರಾ
ವತಿಯ ಸತಿಯರ ಸೋಂಕಿನಲಿ ಸೇರಿದನು ನಿಮಿಷದಲಿ
ಕ್ಷಿತಿಪನಂತ್ಯದೊಳಲ್ಲಿ ಶಸ್ತ್ರ
ಚ್ಯುತಿಯಮಾಡಿ ವಿರಾಗದಲಿ ವನ
ಗತಿಕರಾವೈತಂದೆವೆಂದರು ಗುರುಸುತಾದಿಗಳು ೨೪

ಲೇಸು ಮಾಡಿದಿರಿನ್ನು ನಿಮಗಿ
ನ್ನೈಸಲೇ ಕರ್ತವ್ಯವೆನೆ ಧರ
ಣೀಶನನು ಬೀಳ್ಕೊಂಡರವರಗಲಿದರು ತಮ್ಮೊಳಗೆ
ವ್ಯಾಸಮುನಿಯಾಶ್ರಮದ ಗಂಗಾ
ದೇಶವನು ತದ್ದ್ವಾರಕಿಯ ಸಂ
ವೇಶಿಸಿದರೈ ಗುರುಜ ಕೃಪ ಕೃತವರ್ಮರೊಲವಿನಲಿ ೨೫

ತಿರುಗಿದರು ಬಳಿಕಿತ್ತಲೀ ಮೋ
ಹರದ ಕಾಂತಾಕೋಟಿ ಬಂದುದು
ಪರಳುಮುಳ್ಳುಗಳೊತ್ತುಗಾಲಿನ ದೂರತರಪಥರ
ಉರಿಯ ಜಠರದ ಬಿಸಿಲ ಝಳದಲಿ
ಹುರಿದ ಕದಪುಗಳೆರಡು ಕಡೆಯಲಿ
ಸುರಿವ ನಯನಾಂಬುಗಳ ರಾಜನಿತಂಬಿನೀನಿಕರ ೨೬

ಬಂದುದೀ ಗಜಪುರದ ನಾರೀ
ವೃಂದ ಧೃತರಾಷ್ಟ್ರಾವನೀಶನ
ಮುಂದೆ ವೇದವ್ಯಾಸ ಸಂಜಯ ವಿದುರ ಪೌರಜನ
ಮುಂದಣಾಹವರಂಗಧಾರುಣಿ
ಯೊಂದು ಕೆಲದುಪವನದ ನೆಳಲಲಿ
ನಿಂದುದಿವರಾಗಮನವನು ಕೇಳಿದನು ಯಮಸೂನು ೨೭

ಮುರಮಥನ ಸಾತ್ಯಕಿ ಯುಧಿಷ್ಠಿರ
ಧರಣಿಪತಿ ನರ ಭೀಮ ಮಾದ್ರೇ
ಯರುಗಳೈವರ ಸಾರಥಿಗಳು ಯುಯುತ್ಸು ದಾರುಕರು
ತೆರಳಿತೇಳಕ್ಷೋಹಿಣಿಯ ನೃಪ
ರರಸಿಯರು ದ್ರೌಪದಿಯ ರೋದನ
ಸರದ ಗಾನದ ಜಠರತಾಡನ ತಾಳಮೇಳದಲಿ ೨೮

ಇವರು ಬಂದರು ದೂರದಲಿ ಮಾ
ಧವನ ಮತದಲಿ ನಿಂದರಾಚೆಯ
ಯುವತಿಜನ ಗಾಂಧಾರಿ ಕುಂತೀ ಭಾನುಮತಿ ಸಹಿತ
ವಿವಿಧವಿಕೃತವಿಳಾಸನಯನೋ
ದ್ಭವಪಯಸ್ತಿಮಿರಾಂಶುಕೆಯರ
ದವನಿಯಲಿ ಕೆಡೆದೊರಲುತಿರ್ದರು ತಾರು ಥಟ್ಟಿನಲಿ ೨೯

ಅರಸ ಕೇಳ್ ಧೃತರಾಷ್ಟ್ರ ಸಂಜಯ
ವರ ಮುನಿಪ ವಿದುರಾದಿ ಪರಿಜನ
ಪುರಜನಾವಳಿಯಿದ್ದುದುಪವನದೊಂದು ಬಾಹೆಯಲಿ
ನೆರೆದುದೀಚೆಯಲೊಂದೆಸೆಯಲು
ತ್ತರೆ ಸುಭದ್ರೆಯರಾದಿ ಯಾದವ
ರರಸಿಯರು ಸಹಿತೊರಲುತಿರ್ದಳು ದ್ರೌಪದೀದೇವಿ ೩೦

ಹರಿಸಹಿತ ಪಾಂಡವರದೊಂದೆಸೆ
ಯಿರೆ ಚತುರ್ವಿಧವಾದುದೀ ಮೋ
ಹರದೊಳಾಯ್ತೊಡೆಯಾಟ ವೇದವ್ಯಾಸ ವಿದುರರಿಗೆ
ಧರಣಿಪನ ಕಾಣಿಸುವುದಂಧನ
ನಿರುಪಮಿಂತ ಶೋಕಾನಳನ ಸಂ
ಹರಿಸುವುದು ನಯವೆಂದು ವೇದವ್ಯಾಸಮುನಿ ನುಡಿದ ೩೧

ಇದಕೆ ಸಂಶಯವೇನು ಬೊಪ್ಪನ
ಪದಯುಗವ ಕಾಣಿಸುವುದೆಮ್ಮನು
ಹದುಳವಿಡುವುದು ಹಸ್ತಿನಾಪುರದರಸುತನ ತನಗೆ
ಒದೆದು ನೂಕಿದ ಹದನ ಮಕುಟಾ
ಗ್ರದಲಿ ಧರಿಸುವೆವೆಂದು ಬಿನ್ನವಿ
ಪುದು ಮಹೀಪತಿಗೆಂದು ಮುನಿಗರುಹಿದನು ಯಮಸೂನು ೩೨

ಲೇಸನಾಡಿದೆ ಮಗನೆ ಧರ್ಮದ
ಮಿಾಸಲಲ್ಲಾ ನಿನ್ನ ಮತಿ ಬಳಿ
ಕೈಸಲೇಯೆನುತವರು ಬಂದರು ಭೂಪತಿಯ ಹೊರೆಗೆ
ಆ ಸುಯೋಧನ ನಿನ್ನ ಮಗನ
ಲ್ಲೀ ಸಮಂಜಸ ಧರ್ಮಜನ ಹಿಡಿ
ದೀಸುವುದು ಭವಜಲಧಿಯನೆಂದಮಳಮುನಿ ನುಡಿದ ೩೩

ನೃಪನ ಕಾಣಿಸಿಕೊಂಬುದನಿಬರ
ನುಪಚರಿಸುವುದು ನಿನ್ನ ಮಕ್ಕಳ
ಕೃಪಣತೆಯನಾರ್ಯರಲ್ಲವರ್ಯರುತ್ತಮರು
ಉಪಹತಿಯ ನೆನೆಯದಿರು ದುರ್ಜನ
ರಪಕೃತಿಗೆ ಫಲವಾಯ್ತು ಧರ್ಮವೆ
ರಪಣವಿಹಪರಲೋಕಕೆಲೆ ಧೃತರಾಷ್ಟ್ರ ಕೇಳೆಂದ ೩೪

ಹೈ ಹಸಾದವು ನಿಮ್ಮ ಚಿತ್ತಕೆ
ಬೇಹ ಹದನೇ ಕಾರ್ಯಗತಿ ಸಂ
ದೇಹವೇ ಪಾಂಡುವಿನ ಮಕ್ಕಳು ಮಕ್ಕಳವರೆಮಗೆ
ಕಾಹುರರು ಕಲ್ಮಷರು ಬಂಧು
ದ್ರೋಹಿಗಳು ಗತವಾಯ್ತು ನಿಷ್ಪ
ತ್ಯೂಹವಿನ್ನೇನವರಿಗೆಂದನು ಮುನಿಗೆ ಧೃತರಾಷ್ಟ್ರ ೩೫

ಖಳನ ಹೃದಯದ ಕಾಳಕೂಟದ
ಗುಳಿಗೆಗಳನಿವರೆತ್ತ ಬಲ್ಲರು
ತಿಳುಹಿ ನುಡಿದೊಡಬಡಿಸಿದರು ನಾನಾ ಪ್ರಕಾರದಲಿ
ಘಳಿಲನೀಚೆಗೆ ಬಂದು ಹದನನು
ನಳಿನನಾಭಂಗರುಹೆ ನಸುನಗು
ತೊಳಗೊಳಗೆ ಹರಿ ವಿಶ್ವಕರ್ಮನ ನೆನೆದು ನೇಮಿಸಿದ ೩೬

ನೆನೆದ ಘಳಿಗೆಯೊಳಾತ ಕಟ್ಟು
ಕ್ಕಿನಲಿ ಸರ್ವಾವಯವವನು ಸಂ
ಜನಿಸಿದನು ಪ್ರತಿರೂಪವನು ಪವಮಾನನಂದನನ
ದನುಜರಿಪುಸಹಿತವರು ಬಂದರು
ಮುನಿಯೊಡನೆ ಬಳಿಕಂಧನೃಪತಿಗೆ
ವಿನಯದಲಿ ಮೆಯ್ಯಿಕ್ಕಿದನು ಭಕ್ತಿಯಲಿ ಯಮಸೂನು ೩೭

ಬಾ ಮಗನೆ ಕುರುರಾಜವಂಶ ಶಿ
ರೋಮಣಿಯೆ ನಿರ್ಧೂತ ರಾಜಸ
ತಾಮಸನೆ ಸತ್ವೈಕನಿಧಿ ಬಾ ಕಂದ ಬಾ ಎನುತ
ಭೂಮಿಪನ ತೆಗೆದಪ್ಪಿ ಬಹಳ
ಪ್ರೇಮದಲಿ ಮುಂಡಾಡಿದನು ಕಲಿ
ಭೀಮನೋ ಬಾ ಮಗನೆ ಬಾರೈ ಕಂದ ಬಾ ಎಂದ ೩೮

ಭೀಮನನು ಹಿಂದಿಕ್ಕಿ ಲೋಹದ
ಭೀಮನನು ಮುಂದಿರಿಸಿದಡೆ ಸು
ಪ್ರೇಮನಪ್ಪಿದಡೇನನೆಂಬೆನು ಮೋಹವನು ಮಗನ
ಆ ಮಹಾವಜ್ರಾಯತ ಪ್ರೋ
ದ್ದಾಮದಾಯಸ ಭೀಮತನು ನಿ
ರ್ನಾಮವೆನೆ ನುಗ್ಗಾಗಿ ಬಿದ್ದುದು ನೃಪನ ತಕ್ಕೆಯಲಿ ೩೯

ಮಗನೆ ಹಾ ಹಾ ಭೀಮ ನೊಂದ್ಯೆ
ಮಗನೆ ಕೆಟ್ಟೆನು ಕೆಟ್ಟೆನಕಟೆಂ
ದೊಗುಮಿಗೆಯ ಶೋಕದಲಿ ನೆರೆ ಮರುಗಿದನು ಧೃತರಾಷ್ಟ್ರ
ದುಗಡ ಬೇಡೊಮ್ಮಿಂಗೆ ನಿಮ್ಮಯ
ಮಗನುಳಿದ ನಿಮ್ಮಧಿಕರೋಷದ
ಹಗರಣದ ಹಗೆ ಹೋಯಿತೆಂದನು ನಗುತ ಮುರವೈರಿ ೪೦

ಪ್ರಾಣವಿಮ್ಮಡಿಸಿತ್ತು ಕೋಪದ
ಕೇಣವೆಚ್ಚರಿಸಿದಡೆ ನೃಪ ಸ
ತ್ರಾಣದಲಿ ತನಿಬಗಿಯೆ ನುಗ್ಗಾಯ್ತಾಯಸ ಪ್ರತಿಮೆ
ಮಾಣು ಭಯವನು ಭೀಮ ಭೂಪನ
ಕಾಣು ಹೋಗೆನೆ ನಡುಗಿ ಭುವನ
ಪ್ರಾಣನಾತ್ಮಜ ಬಿದ್ದನಾ ಧೃತರಾಷ್ಟ್ರನಂಘ್ರಿಯಲಿ ೪೧

ಪವನಸುತನೇ ಬಾ ಎನುತ ತ
ಕ್ಕವಿಸಿದನು ಬಳಿಕೆರಗಿದಡೆ ವಾ
ಸವನ ಸುತ ಬಾ ಕಂದ ಎಂದಪ್ಪಿದನು ಫಲುಗುಣನ
ತವಕದಿಂದೆರಗಿದಡೆ ಮಾದ್ರಿಯ
ಜವಳಿ ಮಕ್ಕಳನಪ್ಪಿದನು ಕೌ
ರವಕುಲಾಗ್ರಣಿಗಳಿರ ಕುಳ್ಳಿರಿಯೆಂದನಂಧನೃಪ ೪೨

ಕುರುಮಹೀಪತಿ ನಮ್ಮ ಪೂರ್ವಜ
ರರಸು ತತ್ಸಂತಾನ ಪಾರಂ
ಪರೆಯನಳಿವಡೆ ಕೆಲಬರಾದರು ಹೋದರವರಿಂದು
ಭರತಕುಲವನು ಹೊರೆದು ಮಿಂಗೆ ವಿ
ಸ್ತರಿಸು ಮಗನೆ ಸುಯೋಧನಾದ್ಯರ
ದುರುಳುತನದವಗುಣವನೆಮ್ಮನು ನೋಡಿ ಮರೆಯೆಂದ ೪೩

ಅವರೊಳವಗುಣವೇ ಚಿರಂತನ
ಭವದ ಕಿಲ್ಬಿಷ ಕರ್ಮಪಾಕ
ಪ್ರವರ ದುರಿಯೋಧನನ ಸವ್ಯಪದೇಶಮಾತ್ರದಲಿ
ಎವಗೆ ರಚಿಸಿತು ರಾಜ್ಯವಿಭ್ರಂ
ಶವನು ತತ್ಸುಕೃತೋದಯಪ್ರಾ
ಭವವೆ ತಿರುಗಿಸಿತೆಂದು ನಯದಲಿ ಧರ್ಮಸುತ ನುಡಿದ ೪೪

ಸಾಕಿದಂತಿರಲಬಲೆಯರೊಳು
ದ್ರೇಕಿ ನಿಮ್ಮಯ ಹಿರಿಯ ತಾಯಂ
ದ್ರೇಕವನು ಪರಿಹರಿಸು ಶೋಕಕ್ರೋಧದುಪಟಳಕೆ
ಆಕೆ ಸೈರಿಸಲರಿಯಳರಿವಿನೊ
ಳಾಕೆವಾಳರು ತಿಳಿಹಿ ತಮ್ಮನ
ನಾಕೆಯನು ಕಾಣಿಸುವುದೆಂದನು ವ್ಯಾಸ ವಿದುರರಿಗೆ ೪೫

ವಿದುರ ವೇದವ್ಯಾಸ ಮುನಿಯೀ
ಹದನನರುಹುವೆವೆಂದು ರಾಯನ
ಸುದತಿಯಲ್ಲಿಗೆ ಬಂದು ನುಡಿದರು ಮಧುರವಚನದಲಿ
ಕದಪನಂಗೈಗಿತ್ತು ತಲೆಗು
ತ್ತಿದಳು ನಯನೋದಕದ ಪರಿವಾ
ಹದಲಿ ನನೆದಳು ಮಹಿಳೆಯಿದ್ದಳು ಬಹಳ ಮೋನದಲಿ ೪೬

ದುಗುಡವನು ಬಿಡು ಮೋಹಬಂಧ
ಸ್ಥಗಿತ ಚಿತ್ತವ ಕದಡು ಹಣಿಯಲಿ
ಮಗಳೆ ಮರುಳಾದೌ ವಿಳಾಸದ ವಿಹಿತವಿಹಪರಕೆ
ಅಗಡುಮಕ್ಕಳ ತಾಯ್ಗೆ ತಪ್ಪದು
ಬೆಗಡುಬೇಗೆ ಸುಯೋಧನಾದ್ಯರ
ವಿಗಡತನವನು ನೆನೆದು ನೀ ನೋಡೆಂದನಾ ಮುನಿಪ ೪೭

ಮುನಿಯದಿರು ಗಾಂಧಾರಿ ದಿಟ ನಿ
ನ್ನನುಜನಿಕ್ಕಿದ ಸಾರಿ ನಿನ್ನಯ
ತನುಜರನು ನಿನ್ನಖಿಳಮಿತ್ರಜ್ಞಾತಿ ಬಾಂಧವರ
ಮನುಜಪತಿಗಳನಂತವನು ರಿಪು
ಜನಪ ಶರವಹ್ನಿಯಲಿ ಬೇಳಿದು
ದಿನಿತು ಶೋಕೋದ್ರೇಕ ನಿನಗೇಕೆಂದನಾ ಮುನಿಪ ೪೮

ಅಳಿದವರಿಗಳಲುವುದು ಸಲ್ಲದು
ನಿಲಲಿ ಸಾಕದು ನಿಮ್ಮ ಚಿತ್ತದ
ನೆಲೆಯ ಬಯಕೆಯ ಬೆಸಸಿರೇ ಕರ್ತವ್ಯವೇನೆಮಗೆ
ಕಳವಳಿಪ ಕುಂತೀಸುತರ ಕಣು
ವಳೆಗವಗ್ರಹವಾಗು ನಿರ್ಜರ
ರೊಳಗೆ ಮಕ್ಕಳ ಮಾನ್ಯರನು ಮಾಡೆಂದನಾ ಮುನಿಪ ೪೯

ನಂಬಿಸುವುದೈವರನು ಕಾಣಿಸಿ
ಕೊಂಬುದನಿಬರ ಕರಣವೃತ್ತಿಗೆ
ತುಂಬುವುದು ತನಿಹರುಷವನು ಸೌಹಾರ್ದಶೋಭೆಯಲಿ
ರ್ಝೊಂಬಿಸಲಿ ಕೌರವರು ನಾಕ ನಿ
ತಂಬಿನಿಯರಳಕವನು ಮಗಳೆ ವಿ
ಡಂಬಿಸುವ ಖಳರಭಿಮತಕೆ ಮನವೀಯಬೇಡೆಂದ ೫೦

ರಾಯನನು ಕಾಣಿಸಿದಿರೇ ಪ್ರ
ಜ್ಞಾಯತಾಕ್ಷನ ತಿಳಿಹಿ ಬಂದಿರೆ
ತಾಯಿಗಳು ನಾವೈಸಲೇ ಬಲುಹುಂಟೆ ನಮಗಿನ್ನು
ಸಾಯೆ ಸಾವೆನು ಕುರುಕುಲಾಗ್ರಣಿ
ನೋಯೆ ನೋವೆನು ತನಗೆ ದುರಭಿ
ಪ್ರಾಯವುಂಟೇ ಮಾವ ಎಂದಳು ಮುನಿಗೆ ಗಾಂಧಾರಿ ೫೧

ಐಸಲೇ ಗುಣಮಯಿಯಮಚೋವಿ
ನ್ಯಾಸವಿದು ಸಾರೆನುತ ಮರಳಿದು
ಭೂಸುರಾಗ್ರಣಿ ಬಂದು ನುಡಿದನು ಧರ್ಮನಂದನಗೆ
ರೋಷವಹ್ನಿಯನುಪಶಮಾಂಬು ವಿ
ಳಾಸದಲಿ ನಿಲಿಸೇಳು ನೃಪನ ಮ
ಹಾಸತಿಯ ಖತಿ ಹಿರಿದು ನಮಗೊಳಗಾಗಿ ಭಯವೆಂದ ೫೨

ಹರಿ ವಿದುರ ಪಾರಾಶರಾತ್ಮಜ
ವರ ಮಹೀಪತಿ ಭೀಮ ಮಾದ್ರೇ
ಯರು ಧನಂಜಯ ಸಹಿತ ಬಂದರು ಬಹಳ ವಿನಯದಲಿ
ಚರಣದಲಿ ಮೈಯಿಕ್ಕಿದರೆ ನೃಪ
ವರನ ನೆಗಹಿದಳನಿಲಸುತ ಸಿತ
ತುರಗ ಮಾದ್ರೀಸುತರು ಪದಕೆರಗಿದರು ಭೀತಿಯಲಿ ೫೩

ಏಳಿರೈ ಸಾಕೇಳಿ ಮಕ್ಕಳಿ
ರೇಳಿರೈ ದೇಸಿಗರು ನಾವ್ ಭೂ
ಪಾಲಕರು ನೀವೀಸು ನಮ್ಮಲಿ ಭೀತಿ ನಿಮಗೇಕೆ
ಬಾಲೆಯರು ನಾವಂಧಕರು ನಿ
ಮ್ಮಾಳಿಕೆಯೊಳೇ ನಿಮ್ಮ ಹಂತಿಯ
ಕೂಳಿನಲಿ ಬೆಂದೊಡಲ ಹೊರೆವವರೆಂದಳಿಂದುಮುಖಿ ೫೪

ತಾಯೆ ಖತಿಬೇಡಿನ್ನು ಧರಣಿಗೆ
ರಾಯನೇ ಧೃತರಾಷ್ಟ್ರನಾತನ
ಬಾಯ ತಂಬುಲ ಬೀಳುಡೆಯ ಬಲದಿಂದ ಬದುಕುವೆವು
ತಾಯೆ ನೀವಿನ್ನೆಮಗೆ ಕುಂತಿಯಂ
ತಾಯಿತನವಂತಿರಲಿ ಕರುಣಿಸಿ
ಕಾಯಬೇಕೆಂದರಸ ಮಗುಳೆರಗಿದನು ಚರಣದಲಿ ೫೫

ಧರ್ಮ ನಿಮ್ಮದು ಮಗನೆ ಬರಿಯ ವಿ
ಕರ್ಮವೆಮ್ಮದು ತನ್ನ ಮಕ್ಕಳು
ದುರ್ಮತಿಗಳನ್ಯಾಯಶೀಲರಸಾಧುಸಂಗತರು
ನಿರ್ಮಳರು ನೀವೈವರಾಹವ
ಧರ್ಮಕುಶಲರು ಲೋಕ ಮೆಚ್ಚಲು
ಧರ್ಮ ನಿಮಗಿನ್ನೆನುತ ತಲೆಗುತ್ತಿದಳು ಗಾಂಧಾರಿ ೫೬

ಧರ್ಮವಾಗಲಿ ಮೇಣು ರಣದಲ
ಧರ್ಮವಾಗಲಿ ಖಾತಿಯಲಿ ಪರ
ಮರ್ಮಘಾತಕವಾಯ್ತು ಸಾಕಿನ್ನೆಂದು ಫಲವೇನು
ನಿರ್ಮಳಾಂತಃಕರಣಕೃತಪರಿ
ಕರ್ಮವಿಳಸಿತೆ ತಾಯೆ ಸೈರಿಪು
ದುಮ್ಮಳವು ಬೇಡೆಂದು ಮೆಯ್ಯಿಕ್ಕಿದನು ಕಲಿಭೀಮ ೫೭

ಏಳು ತಮ್ಮ ವೃಥಾ ವಿಡಂಬನ
ದಾಳಿಯಾಟವಿದೇಕೆ ಸೈರಿಸ
ಹೇಳಿದೈ ಸೈರಿಸದೆ ಮುನಿದಡೆ ನಿಮಗೆ ಕೇಡಹುದೆ
ಕಾಳಗದ ಕೃತಸಮಯಸತ್ಯವ
ಪಾಲಿಸಿದವರು ನೀವಲೇ ದಿಟ
ಖೂಳರಾವೈಸಲೆ ಎನುತ ಗಜರಿದಳು ಗಾಂಧಾರಿ ೫೮

ಹೊರಿಸುವಡೆ ದುಷ್ಕೀರ್ತಿ ನಮ್ಮಲಿ
ಹೊರಿಗೆಯಾಯಿತು ನಾಭಿಯಿಂ ಕೆಳ
ಗೆರಗುವುದು ಗದೆಯಿಂದ ಸಲ್ಲದು ಶಸ್ತ್ರವಿದ್ಯೆಯಲಿ
ಅರಿಕೆಯಿಂದನ್ಯಾಯವೀ ಜಗ
ವರಿಯೆ ನಮ್ಮದು ತಾಯೆ ನೀ ಮನ
ಮರಿಯದವಧರಿಸುವಡೆ ಬಿನ್ನಹವೆಂದನಾ ಭೀಮ ೫೯

ಅರಗಿನರಮನೆ ಕೊಂಡವೆಮ್ಮ
ವರು ಸಮಿತ್ತುಗಳಾ ಸುಯೋಧನ
ಪರಮಯಜಮಾನನು ಜಯಾಧ್ವರ ವಿಧಿಯಪೂರ್ವವನು
ಕುರುನೃಪತಿಯನುಭವಿಸಿದನು ತ
ಚ್ಚರಿತವೇನನ್ಯಾಯಪಥವೇ
ಧುರದೊಳೆಮಗನ್ಯಾಯವೈಸಲೆ ದೈವಕೃತವೆಂದ ೬೦

ಕಪಟದಲಿ ಜೂಜಾಡಿ ರಾಜ್ಯವ
ನಪಹರಿಸಿದಡೆ ಧರ್ಮ ನಿಮ್ಮದು
ಕೃಪಣತೆಯ ನಾನೇನ ಹೇಳುವೆನಾ ಸುಯೋಧನನ
ದ್ರುಪದಪುತ್ರಿಯ ಗಾಥ ಗರುವಿಕೆ
ಗುಪಹತಿಯ ಮಾಡುವುದು ಧರ್ಮದ
ವಿಪುಳ ಪಥ ನಿಮ್ಮದು ಮಹಾಧರ್ಮಜ್ಞರಹಿರೆಂದ ೬೧

ಲಲನೆ ಋತುಮತಿಯೆಂದಡೆಯು ಸಭೆ
ಗೆಳೆದು ತಂದವರಧಿಕಸಜ್ಜನ
ರಳಿಕುಳಾಳಿಕೆಯುಟ್ಟ ಸೀರೆಯನೂರುಮಧ್ಯದಲಿ
ಸುಲಿಸಿದರು ಧಾರ್ಮಿಕರು ತಾವೇ
ಖಳರು ನೀವೇ ಸುಜನರೆಮ್ಮಾ
ಸ್ಖಲಿತವನು ನೀವಿನ್ನು ಸೈರಿಸಿ ತಾಯೆ ನಮಗೆಂದ ೬೨

ಕದನವಿಜಯದ ಭಂಗಿ ತಲೆಗೇ
ರಿದುದೊ ಮೇಲಂಕಣದಲೊಡವು
ಟ್ಟಿದನ ನೆತ್ತರುಗುಡಿಹಿ ನಿನ್ನೊಡನೆನಗೆ ಮಾತೇನು
ಇದಿರಲಿರದಿರು ಸಾರು ಕರೆ ಧ
ರ್ಮದ ವಿಡಂಬದ ಧರ್ಮಪುತ್ರನ
ಹದನ ಕೇಳುವೆನೆನುತ ಕಳವಳಿಸಿದಳು ಗಾಂಧಾರಿ ೬೩

ಧರಣಿಪತಿ ಕೇಳ್ ಸುಬಲಜೆಯ ನಿ
ಷ್ಠುರದ ನುಡಿಯಲಿ ನಡುಗಿ ಭೂಪತಿ
ಕರವ ಮುಗಿದತಿವಿನಯಭರದಲಿ ಬಾಗಿ ಭೀತಿಯಲಿ
ಕರುಣಿಸೌ ಗಾಂಧಾರಿ ನಿರ್ಮಳ
ಕುರುಕುಲಾನ್ವಯಜನನಿ ಕೋಪ
ಸ್ಫುರಣದಲಿ ಶಪಿಸೆನಗೆ ಶಾಪಾರುಹನು ತಾನೆಂದ ೬೪

ಶಾಪವನು ನೀ ಹೆಸರಿಸೌ ಸ
ರ್ವಾಪರಾಧಿಗಳಾವು ನಿಮ್ಮಯ
ಕೋಪ ತಿಳಿಯಲಿ ತಾಯೆ ಫಲಿಸಲಿ ಬಂಧುವಧೆ ನಮಗೆ
ನೀ ಪತಿವ್ರತೆ ನಿನ್ನ ಖತಿ ಜೀ
ವಾಪಹಾರವು ತಮಗೆ ನಿಮ್ಮನು
ತಾಪವಡಗಲಿ ತನ್ನನುರುಹೆಂದೆರಗಿದನು ಪದಕೆ ೬೫

ನನೆದುದಂತಃಕರಣ ಕರುಣಾ
ವಿನುತರಸದಲಿ ಖತಿಯು ಝಳ ಝೊ
ಮ್ಮನಲಿ ಜಡಿದುದು ಜಾರಿತಗ್ಗದ ಪುತ್ರಶತಶೋಕ
ಜನಪ ಕೇಳೈ ರಾಜಸದ ಸಂ
ಜನಿತ ತಾಮಸಬೀಜಶೇಷದ
ವನಜಮುಖಿ ನೋಡಿದಳು ನಖಪಂಕ್ತಿಗಳನವನಿಪನ ೬೬

ಉರಿದವರಸನ ನಖನಿಕರ ಹೊಗೆ
ವೆರಸಿ ಕೌರಿಡಲೋಡಿ ಹೊಕ್ಕರು
ನರವೃಕೋದರರರಸುರರಿಪುವಿನ ಪಶ್ಚಿಮಾಂಗದಲಿ
ಹರಿಯಭಯಕರವೆತ್ತಿ ಯಮಜಾ
ದ್ಯರನು ಸಂತೈಸಿದನು ರೋಷ
ಸ್ಫುರಣವಡಗಿತು ಸುಬಲಸುತೆಗಿನ್ನಂಜಬೇಡೆಂದ ೬೭

ಕೃತಕ ಭೀಮನ ಕೊಂಡು ಮುಳುಗಿತು
ಕ್ಷಿತಿಪತಿಯ ರೋಷಾಗ್ನಿಯಾತನ
ಸತಿಯ ಖತಿ ಮುಗ್ಗಿತು ಮಹೀಶನ ನಖಮರೀಚಿಯಲಿ
ಜಿತವಿರೋಧವ್ಯಾಪ್ತಿ ಬಹಳ
ವ್ಯತಿಕರದೊಳಾಯ್ತೆಂದು ಲಕ್ಷ್ಮೀ
ಪತಿ ನರೇಂದ್ರನ ಸಂತವಿಟ್ಟನು ಸಾರವಚನದಲಿ ೬೮

ಭೀತಿ ಬೇಡೆಲೆ ಮಕ್ಕಳಿರ ನಿ
ರ್ಧೂತ ಧರ್ಮಸ್ಥಿತಿಗಳನ್ವಯ
ಘಾತಕರು ತಮ್ಮಿಂದ ತಾವಳಿದರು ರಣಾಗ್ರದಲಿ
ನೀತಿಯಲಿ ನೀವಿನ್ನು ಪಾಲಿಸಿ
ಭೂತಳವನುರೆ ಕಳಿದ ಬಂಧು
ವ್ರಾತಕುದಕವನೀವುದೆಂದಳು ನೃಪಗೆ ಗಾಂಧಾರಿ ೬೯

ಅನುನಯವ ರಚಿಸಿದಳು ಕೌರವ
ಜನನಿ ಲೇಸಾಯ್ತೆನುತ ಬಂದರು
ವಿನಯದಲಿ ಮೆಯ್ಯಿಕ್ಕಿದರು ನಿಜ ಮಾತೆಯಂಘ್ರಿಯಲಿ
ನನೆದಳಕ್ಷಿಪಯಃಪ್ರವಾಹದೊ
ಳನಿಬರನು ತೆಗೆದಪ್ಪಿ ಕುಂತೀ
ವನಿತೆ ಸಂತೈಸಿದಳು ನಯದಲಿ ತನ್ನ ನಂದನರ ೭೦

ಏಳು ಧರ್ಮಜ ಪುತ್ರಶೋಕ
ವ್ಯಾಳವಿಷಮೂರ್ಛಿತೆಯಲಾ ಪಾಂ
ಚಾಲಸುತೆಯನು ತಿಳುಹಿ ಕಾಣಿಸು ಸುಬಲನಂದನೆಯ
ಬಾಲೆಯರನಾ ಭಾನುಮತಿ ಭ
ಡಾಳದುಃಖವನಪಹರಿಸು ಪಡಿ
ತಾಳ ಬೇಡೆನೆ ಬಂದರನಿಬರು ದ್ರೌಪದಿಯ ಹೊರೆಗೆ ೭೧

ಕರೆದು ತಂದರು ವಿಗತಲೋಚನ
ನರಸಿಯನು ಕಾಣಿಸಿದರತ್ತೆಯ
ಚರಣಯುಗದೊಳಗೆರಗೆ ಹಿಡಿದೆತ್ತಿದಳು ಗಾಂಧಾರಿ
ಮರುಳು ಮಗಳೆ ಕುಮಾರ ವರ್ಗದ
ಮರಣ ಸೊಸೆಯತ್ತೆಯರಿಗೊಂದೇ
ಪರಿ ವೃಥಾ ವ್ಯಥೆಯೇಕೆನುತ ಸಂತೈಸಿದಳು ಸತಿಯ ೭೨

ಸರಿಯಲೌ ಸುತಶೋಕ ನಮ್ಮ
ಬ್ಬರಿಗೆ ನಮ್ಮೊಳುವೆರಸಿ ವೈರೋ
ತ್ಕರವಿಸಂಸ್ಥುಳರಣವಿಧಾನವ ನಮ್ಮೊಳಗೆ ರಚಿಸಿ
ಎರಡು ಬದಲಲಿ ಸಕಲ ಭೂಮೀ
ಶ್ವರರ ಚಾತುರ್ಬಲವನುಪಸಂ
ಹರಿಸಿದಾತನು ತಾನೆ ಗದುಗಿನ ವೀರನಾರಯಣ ೭೩

ಹನ್ನೆರಡನೆಯ ಸಂಧಿ

ಸೂ. ರಣವ ಶೋಧಿಸಲೆಂದು ಕಳನೊಳು
ಹೆಣನ ತುಳಿತುಳಿದರಸೆ ಕುರುಧಾ
ರುಣಿಯ ಪತಿಯನು ಕಂಡು ನೆರೆ ಮರುಗಿದಳು ಗಾಂಧಾರಿ

ಕೇಳು ಜನಮೇಜಯ ಧರಿತ್ರೀ
ಪಾಲ ಕೃಷ್ಣನ ಕರೆದು ನಯದಲಿ
ಲೋಲಲೋಚನೆ ನುಡಿದಳಂತಸ್ತಾಪ ಶಿಖಿ ಜಡಿಯೆ
ಏಳು ತಂದೆ ಮುಕುಂದ ಕದನ
ವ್ಯಾಳವಿಷನಿರ್ದಗ್ಧಧರಣೀ
ಪಾಲವರ್ಗವ ತೋರಿಸೆಂದಳು ತರಳೆ ಕೈಮುಗಿದು ೧

ನಿನ್ನ ಲೀಲೆಯ ಬೆಳೆಸಿರಿಯ ಸಂ
ಪನ್ನ ಮಾಯಾರಚನೆಯಿದು ನಿ
ರ್ಭಿನ್ನಭಾರತನಿಚಿತ ಬಹಳಾಕ್ಷೋಹಿಣೀ ದಳವ
ತನ್ನೊಡನೆ ಹಗೆಬೆಳೆದ ಶೌರ್ಯವಿ
ಪನ್ನರನು ತೋರೈ ಜನಾರ್ದನ
ಮನ್ನಿಸೆಂದಳು ನಯನಜಲವನು ಮಿಡಿದು ಗಾಂಧಾರಿ ೨

ತಾಯೆ ಬಾ ಗಾಂಧಾರಿ ಮನದಲಿ
ನೋಯದಿರು ಪೌರಾಣಜನ್ಮದ
ದಾಯಭಾಗದ ಭೋಗ ಭಂಗಿಸಲಳುಕಲೇಕಿನ್ನು
ಸಾಯಲಾಗದೆ ಸುಭಟರಸುಗಳು
ಬೀಯವೇ ಬ್ರಹ್ಮಾದಿಗಳಿಗಿದು
ದಾಯವೀ ಸಂಸಾರವೆಂದನು ನಗುತ ಮುರವೈರಿ ೩

ಎಂದು ಕೈಗೊಟ್ಟಬಲೆಯನು ಹರಿ
ತಂದನಾ ಸಂಗ್ರಾಮಭೂಮಿಗೆ
ಹಿಂದೆ ಬರಲಷ್ಟಾದಶಾಕ್ಷೋಹಿಣಿಯ ನಾರಿಯರು
ಮುಂದೆ ಹೆಣದಿನಿಹಿಗಳು ಖಗಮೃಗ
ವೃಂದ ಚೆಲ್ಲಿತು ಭೂತ ಪೂತನಿ
ವೃಂದ ಕೆದರಿತು ಹೊಕ್ಕರಿವರದ್ಭುತರಣಾಂಗಣವ ೪

ಸೂಸಿತಬಲಾವೃಂದ ಕೆದರಿದ
ಕೇಶಪಾಶದ ತೆಳುವಸುರ ನಿ
ಟ್ಟಾಸುರದ ಹೊಯ್ಲುಗಳ ಲೋಚನವಾರಿಧಾರೆಗಳ
ಆಸುರಾಕ್ರಂದನದ ಶೋಕಾ
ವೇಶ ಬಹಳದ ಬಾಲೆಯರು ಪ್ರಾ
ಣೇಶ ಮೈದೋರೆನುತ ಹೊಕ್ಕರಸಿದರು ಕಳನೊಳಗೆ ೫

ಹರಿದರಗಲಕೆ ನಾರಿಯರು ಕುರು
ಧರಣಿಯಲಿ ತಂತಮ್ಮ ಪತಿಗಳ
ಕರಿಗಳಲಿ ತುರಗದಲಿ ರಥದಲಿ ಕಂಡರಲ್ಲಲ್ಲಿ
ಶಿರವ ಮುಂಡಾಡಿದರು ಹೆಣನಲಿ
ಹೊರಳಿದರು ವಿವಿಧ ಪ್ರಳಾಪದ
ಪರಿತವವನೆಂತರಿದರೋ ವರ್ಣಿಸುವಡರಿದೆಂದ ೬

ನಡೆದಳಾ ಗಾಂಧಾರಿ ಶೋಕದ
ಕಡಲೊಳೇಳುತ ಮುಳುಗುತಂಘ್ರಿಯು
ಕೊಡಹುಂತರುಣಾಂಬುಗಳ ಹೊನಲಿನ ಜಾನುದಘ್ನಗಳ
ಅಡಗಿನಲಿ ಕಾಲೂರಿ ಸಿಲುಕಿದ
ಡೊಡನೆ ಹರಿ ನೆಗಹುವನು ನರವಿನ
ತೊಡಕ ಬಿಡಿಸುತ ಹೊಕ್ಕಳಂಗನೆ ಹೆಣನ ಮಧ್ಯದಲಿ ೭

ಇತ್ತ ನೋಡೈ ದೇವಕೀಸುತ
ಮತ್ತಗಜ ಕಂಧರದೊಳಾ ಭಗ
ದತ್ತನನು ಕಂಡಾತನರಸಿಯರೈದೆ ಮೊಗವೆತ್ತಿ
ಸುತ್ತಬರುತೈದಾರೆ ದಂತಿಯು
ಹತ್ತಲರಿಯದೆ ನೂರುಮಡಿ ಶೋ
ಕೋತ್ತರದಲದೆ ಶಿವ ಎನುತ ಮರುಗಿದಳು ಗಾಂಧಾರಿ ೮

ದೇವ ನೋಡಾ ಶೋಕವಹ್ನಿಯು
ಡಾವರವ ಕಾಂಭೋಜನರಸಿಯ
ರಾವ ನೋಂಪಿಯ ನೋಂತರೋ ಶಿವಶಿವ ಮಹಾದೇವ
ಆವನಾತನು ನಿಮ್ಮವರುಗಳ
ಮಾವನೇ ಪಾಂಚಾಲ ಸತಿಯರು
ಜೀವದಲಿ ಜಾರಿದರು ರಮಣರ ಮೇಲೆ ತನಿಹೊರಳಿ ೯

ಅದೆ ವಿರಾಟನ ಸತಿಯರೀಚೆಯ
ಲದೆ ಘಟೋತ್ಕಚನಂಗನೆಯರಾ
ಸುದತಿಯರ ಶೋಕವ ನಿರೀಕ್ಷಿಸು ಪಂಚಕೇಕೆಯರ
ಒದರಿ ಪಾಂಡ್ಯನ ಹೆಂಡಿರಾಚೆಯ
ಲದೆ ಸುಸೋಮಕ ಸೃಂಜಯಾದ್ಯರ
ವಧುಗಳೊರಲುತ್ತದೆ ಮುರಾಂತಕ ನಿಮ್ಮ ಸೇನೆಯಲಿ ೧೦

ಸುಖಿ ಕಣಾ ಭೂರಿಶ್ರವನವರ
ಸಖಿಯರದೆ ಪಾಡಳಿದು ನಿಮ್ಮಯ
ಸಖನ ಗೆಲಿಸಿದಿರಿವನ ಮುರಿದಿರಿ ರಾಧೆಯಾತ್ಮಜನ
ನಿಖಿಳ ಯಾಚಕಜನ ಸಹಿತ ತ
ತ್ಸಖಿಯರಳುತದೆ ಕರ್ಣ ಮರಣದೊ
ಳಖಿಳಜಗ ನೀನೊಬ್ಬ ತಪ್ಪಿಸಿ ಮರುಗಿತಿಂದಿನಲಿ ೧೧

ಭಾನುದತ್ತನ ಮೇಲೆ ಹೊರಳುವ
ಮಾನಿನಿಯರ ನಿರೀಕ್ಷಿಸೈ ಮ
ತ್ಸೂನುಗಳ ನೋಡಿತ್ತಲಿದೆ ದುಶ್ಶಾಸನಾದಿಗಳ
ಏನನೆಂಬೆನು ತನ್ನ ಸೊಸೆಯರ
ಹಾನಿಯನು ಮಾದ್ರೇಶನರಸಿಯ
ರೇನಧರ್ಮವ ನೆನೆದರೆಂದಳಲಿದಳು ಗಾಂಧಾರಿ ೧೨

ತಂದೆ ನೋಡೈ ಕೃಷ್ಣ ತನ್ನಯ
ನಂದನರು ನೂರ್ವರಿಗೆ ಕಿರಿಯಳ
ನಿಂದುಮುಖಿ ದುಶ್ಶಳೆಯನಾ ಸೈಂಧವನ ವಲ್ಲಭೆಯ
ಅಂದು ವಿವಿಧವ್ಯೂಹದಲಿ ಗುರು
ನಿಂದಡೆಯು ಹುಸಿರಾತ್ರಿಯಲಿ ನೀ
ಕೊಂದಲೈ ತನ್ನಳಿಯನನು ವರ ಸಿಂಧುಭೂಪತಿಯ ೧೩

ಕ್ಷೇಮಧೂರ್ತಿಯನಾ ಕಳಿಂಗನ
ಸೋಮದತ್ತನ ಚಿತ್ರಸೇನನ
ಭೀಮವೈರಿಯಲಂಬುಸನ ಕಿಮ್ಮೀರನಂದನನ
ಭೌಮಸಂತನ ಸುಶರ್ಮಕನ ಸಂ
ಶ್ರಾಮರಿಪುಗಳ ಭೂರಿಬಲದ ಸ
ನಾಮರರಸಿಯರದೆ ನಿಜೇಶನ ಮೇಲೆ ತನಿಹೊರಳಿ ೧೪

ಎನುತ ಬರೆಬರೆ ಮುಂದೆ ಕಂಡಳು
ತನುಜನನು ಭೀಮನ ಗದಾ ಘ
ಟ್ಟನದ ಘಾಯದ ಮೆಯ್ಯ ಖಂಡಿಸಿದೂರುಮಂಡಲದ
ನನೆದ ಹುಡಿಮಗ್ಗುಲಿನ ರಕುತದ
ಹೊನಲ ಹೊಲಸಿನ ಘೂಕಕಾಕ
ಧ್ವನಿ ಭಯಂಕರ ಸನ್ನಿಧಾನದ ಕೌರವೇಶ್ವರನ ೧೫

ಇತ್ತ ನೋಡೈ ಕೃಷ್ಣ ತನ್ನಯ
ಮತ್ತದಂತಿಯನಿಂದುಕುಲ ರಾ
ಜೋತ್ತಮನನೇಕಾದಶಾಕ್ಷೋಹಿಣಿಯ ವಲ್ಲಭನ
ಹತ್ತೆ ಹಿಡಿದೋಲಗಿಸುವರು ವರ
ಮತ್ತಕಾಶಿನಿಯರುಗಳೀಗಳು
ಸುತ್ತಮುತ್ತಿತು ಘೂಕ ವಾಯಸ ಜಂಬುಕವ್ರಾತ ೧೬

ಎನುತ ಬಿದ್ದಳು ಮೂರ್ಛೆಯಲಿ ಮಾ
ನಿನಿಯನೆತ್ತಿದನಸುರರಿಪು ನೃಪ
ವನಿತೆಯರು ಭಾನುಮತಿ ಮೊದಲಾದಖಿಳ ರಾಣಿಯರು
ಜನಪತಿಯ ಮುಂಕ್ಕುರುಕಿದರು ತ
ಜ್ಜನಿತ ಶೋಕಾದ್ಭುತದ ಹಾ ಹಾ
ಧ್ವನಿಯು ಥಟ್ಟನೆ ಘಟ್ಟಿಸಿತು ಬ್ರಹ್ಮಾಂಡಮಂಡಲವ ೧೭

ಜನಪ ಕೇಳೀಚೆಯಲಿ ಕುಂತೀ
ವನಿತೆ ಕರ್ಣನ ಮೇಲೆ ಹೊರಳಿದ
ಳಿನತನುಜ ಹಾ ಕರ್ಣ ಹಾ ಹಾ ಕರ್ಣ ಹಾಯೆನುತ
ನಿನಗೆ ಧರ್ಮಸುತಾದಿ ಭೂಮಿಪ
ರನುಜರೈ ಮಾಯಾವಿ ಮಧುಸೂ
ದನನೆ ಮರಯಿಸಿ ಕೊಂದನಕಟೆಂದೊರಲಿದಳು ಕುಂತಿ ೧೮

ಅರಿದನಂತಕಸೂನು ಮುರಹರ
ನಿರಿದನೇ ನಾವಿನ್ನು ಕರ್ಣಗೆ
ಕಿರಿಯರೈ ಲೇಸಾಯ್ತು ಗುರುಜನ ಬಂಧುಜನಹನನ
ಉರುವ ಶಶಿವಂಶದ ಮಹಾನೃಪ
ರೆರಗಿದರೆ ಪಾತಕಕೆ ಮುನ್ನೆ
ಚ್ಚರಿಸದಕಟಾ ತಾಯಿ ಕೆಡಿಸಿದಳೆಂದು ಬಿಸುಸುಯ್ದು ೧೯

ಹೋಗಲಿನ್ನಾ ಕ್ಷತ್ರಧರ್ಮ
ತ್ಯಾಗ ದುರ್ವ್ಯಸನ ಪ್ರಪಂಚವ
ನೀಗಿ ಕಳೆಯೆಂದಸುರರಿಪುವೈತಂದು ಮನ್ನಿಸಿದ
ಮೇಗಿವರ ಸಂಸ್ಕಾರಕಾರ್ಯವಿ
ಯೋಗವಿವೆ ಭಾರಂಕ ನಿನಗೆ ಸ
ರಾಗದಲಿ ಸಂತೈಸಿಯೆಂದನು ಭೂಪತಿಗೆ ಶೌರಿ. ೨೦

ವ್ಯಾಸ ನಾರದ ವಿದುರ ಸಾತ್ಯಕಿ
ಕೇಶವನು ದಾರುಕ ಯುಯುತ್ಸು ಮ
ಹೀಶ ಮೊದಲಾದನಿಬರರಸರ ಸಾರಥಿವ್ರಾತ
ಆ ಸಚಿವರಾ ಹಸ್ತಿನಾಪುರ
ದಾ ಸಮಸ್ತಪ್ರಕೃತಿಜನ ಸಂ
ತೈಸಿದರು ಸಂಸ್ಕಾರವಿಧಿಯನು ಹತಮಹೀಶರಿಗೆ ೨೧

ಕುರುಪತಿಯ ರವಿಸುತನ ಮಾದ್ರೇ
ಶ್ವರನ ದುಶ್ಶಾಸನ ವಿಕರ್ಣಾ
ದ್ಯರ ಜಯದ್ರಥ ಬಾಹ್ಲಿಕರ ಭಗದತ್ತ ಲಕ್ಷಣರ
ಗುರುವರನ ಪಾಂಚಾಲ ಮತ್ಸ್ಯೇ
ಶ್ವರರ ಕುಂತೀಭೋಜನೃಪಮು
ಖ್ಯರನು ವಿಧಿಪೂರ್ವಕದಿ ದಹಿಸಿದರಾಹಿತಾಗ್ನಿಯಲಿ ೨೨

ಕಳನ ಚೌಕದ ಸುತ್ತಲೊಟ್ಟಿಸಿ
ತಳಿಗಳನು ಬಹಳಾಗ್ನಿಯನು ಕೈ
ಕೊಳಿಸಿದರು ದಹಿಸಿದರು ಬಹಳಾಕ್ಷೋಹಿಣೀಭಟರ

ಬಳಿಕ ಹಸ್ತಿನಪುರದ ಸೀಮಾ
ಸ್ಥಳಕೆ ಬಂದರು ನಿಖಿಳ ಕಾಂತಾ
ವಳಿಸಹಿತ ಗಂಗಾವಗಹನವ ಮಾಡಿದನು ನೃಪತಿ ೨೩

ಆ ನದಿಯ ತೀರದಲಿ ತಿಂಗಳು
ಮಾನನಿಧಿ ತತ್ಪ್ರೇತರಿಗೆ ಜಲ
ದಾನ ವಿಧಿವಿಹಿತಪ್ರಪಂಚಿತ ಸಕಲ ಸಂಸ್ಕೃತಿಯ
ಭೂನುತನು ಮಾಡಿದನು ಬಂದುದು
ಜಾನಪದಜನವೈದೆ ಕುಂತೀ
ಸೂನುವನು ದರುಶನವ ಮಾಡಿತು ಕಾಣಿಕೆಯ ನೀಡಿ ೨೪

ತಿಳುಹಿ ರಾಯನ ಹೃದಯಸಂಚಿತ
ಕಲುಷವನು ಖಂಡಿಸಿ ಗತಾಕ್ಷನ
ಬಲಿದ ಚಿತ್ತವ್ಯಥೆಯನಾರಿಸಿ ನೃಪವಧೂಜನದ
ಅಳಲನಾರಿಸಿ ಗಜಪುರದ ನೃಪ
ನಿಳಯವನು ಹೊಗಿಸಿದನು ಯದುಕುಲ
ತಿಲಕ ಗದುಗಿನ ವೀರನಾರಾಯಣನು ಪಾಂಡವರ ೨೫

ಹದಿಮೂರನೆಯ ಸಂಧಿ

ಸೂ. ದೇವಸಂತತಿ ನಲಿಯೆ ಪಾಂಡವ
ಜೀವಿ ಹರಿಯೆಂಬೀ ಪ್ರತಿಜ್ಞೆಯ
ಭಾವ ಸಂದುದು ಧರ್ಮಜನ ಪಟ್ಟಾಭಿಷೇಕದಲಿ

ಕೇಳು ಜನಮೇಜಯ ಧರಿತ್ರೀ
ಪಾಲ ಹಿಮಗಿರಿ ತೊಡಗಿ ಸಾಗರ
ವೇಲೆ ಪರಿಯಂತಖಿಳ ನಗರ ಗ್ರಾಮ ಪುರವರದ
ಮೇಲುವರ್ಣಪ್ರಮುಖವಾಚಾಂ
ಡಾಲರವಧಿ ಸಮಸ್ತ ಭೂಜನ
ಜಾಲ ಹಸ್ತಿನಪುರಿಗೆ ಬಂದುದು ಕಂಡುದವನಿಪನ ೧

ಚ್ಯವನ ಮುದ್ಗಲ ಕಣ್ವ ಕಠ ಭಾ
ರ್ಗವ ಭರದ್ವಾಜಾಂಗಿರಸ ಗಾ
ಲವ ಪುಲಸ್ತ್ಯ ರುಮಣ್ವ ಗೌತಮ ಯಾಜ್ಞವಲ್ಕ್ಯಮುನಿ
ಧ್ರುವ ವಿಭಾಂಡಕ ಗಾರ್ಗ್ಯ ಘಟಸಂ
ಭವ ಮೃಕಂಡುಸುತಾದಿ ಭೂಮಿ
ಪ್ರವರ ಮುನಿಗಳು ಬಂದು ಕಂಡರು ಧರ್ಮನಂದನನ ೨

ಜಲಧಿ ಮಧ್ಯದ ಕುರುವ ಘಟ್ಟಾ
ವಳಿಯ ಕೊಳ್ಳದ ಕುಹರ ಕುಂಜದ
ನೆಲೆಯ ಗಿರಿಸಾನುಗಳ ಶಿಖರದ ದುರ್ಗವೀಥಿಗಳ
ನೆಲನಶೇಷಪ್ರಜೆ ನಿಖಿಳ ಮಂ
ಡಳಿಕ ಮನ್ನೆಯ ವಂದಿಜನ ಸಂ
ಕುಲ ಮತಂಗಜಪುರಿಗೆ ಬಂದುದು ನೃಪನ ಕಾಣಿಕೆಗೆ ೩

ವ್ಯಾಸ ನಾರದ ಕೃಷ್ಣ ಮೊದಲಾ
ದೀ ಸಮಸ್ತ ಮುನೀಂದ್ರನಿಕರ ಮ
ಹೀಶನನು ಪಟ್ಟಾಭಿಷೇಕಕೆ ಮನವನೊಡಬಡಿಸಿ
ದೋಷರಹಿತ ಮುಹೂರ್ತ ಲಗ್ನ ದಿ
ನೇಶವಾರ ಶುಭಗ್ರಹೋದಯ
ಲೇಸೆನಲು ನೋಡಿದರು ಮಿಗೆ ಗಾರ್ಗ್ಯಾದಿ ಜೋಯಿಸರು ೪

ತರಿಸಿ ಮಂಗಳ ವಸ್ತುಗಳ ಸಂ
ವರಿಸಿ ಬಹುವಿಧವಾದ್ಯರವ ವಿ
ಸ್ತರದ ಪಂಚಮಹಾನಿನಾದದ ಸರ್ವಜನಮನದ
ಹರುಷಪೂರದ ವೇದಮಂತ್ರೋ
ಚ್ಚರಣಸಾರದ ನೃಪನ ಪಟ್ಟಾ
ಧ್ವರವೆಸೆಯಲುತ್ಸವವನೆಸಗಿದನಸುರರಿಪುವಂದು ೫

ಆದುದಾ ಪಟ್ಟಾಭಿಷೇಕದೊ
ಳಾ ದುರಾತ್ಮಕ ಬಾಷ್ಕಳನ ಪರಿ
ವಾದವನು ಮುನಿನಿಕರ ಕೇಳಿದು ಖತಿಯ ಭಾರದಲಿ
ಭೇದಿಸಿದರವನಸುರನೆಂದು ವಿ
ಷಾದವಹ್ನಿಯಲುರುಹಿದರು ಬಳಿ
ಕಾದರಿಸಿ ಧರ್ಮಜನ ಸಂತೈಸಿದನು ಮುರವೈರಿ ೬

ಅರಸ ಕೇಳ್ಳೆ ಪಟ್ಟವದು ಹಿರಿ
ಯರಸನದು ಯುವರಾಜಪಟ್ಟವೆ
ಹರಿತನೂಜನೊಳಾಯ್ತು ಸೇನಾಪತಿ ಧನಂಜಯನು
ವರ ಕುಮಾರರು ಯಮಳರಲ್ಲಿಗೆ
ಹಿರಿಯ ಸಚಿವನು ವಿದುರನವನಿಪ
ಪರುಠವಿಸಿದ ಯುಯುತ್ಸುವನು ಸರ್ವಾಧಿಕಾರದಲಿ ೭

ವರ ಮುನೀಂದ್ರರ ನಿಖಿಳ ದೇಶಾಂ
ತರದ ಭೂಸುರವರ್ಗವನು ಸ
ತ್ಕರಿಸಿದನು ಗೋ ಭೂಮಿ ವಸನ ಹಿರಣ್ಯದಾನದಲಿ
ಪರಿಜನವ ಪುರಜನವ ರತ್ನಾ
ಕರಪರೀತ ಮಹೀಜನವನಾ
ದರಿಸಿದನು ವೈಭವವಿಹಿತ ಸನ್ಮಾನ ದಾನದಲಿ ೮

ಆ ಸುಯೋಧನನರಮನೆಯುನವ
ನೀಶ ಹೊಕ್ಕನು ಪವನಸುತ ದು
ಶ್ಶಾಸನನ ಸದನವನು ಪಾರ್ಥಗೆ ಕರ್ಣಭವನದಲಿ
ವಾಸವಾದುದು ಯಮಳರಿಗೆ ದು
ಶ್ಶಾಸನಾನುಜರರಮನೆಗಳುಳಿ
ದೈಸುಮನೆ ಭಂಡಾರವಾದುದು ಭೂಪ ಕೇಳೆಂದ ೯

ಮನ್ನಣೆಯಲಿ ಯುಯುತ್ಸು ಹೊಕ್ಕನು
ತನ್ನ ಮನೆಯನು ಭೀಷ್ಮ ಗುರುಕೃಪ
ರುನ್ನತಾಲಯವಾಯ್ತು ನೃಪನ ಪಸಾಯ್ತಸಂತತಿಗೆ
ಮುನ್ನಿನವರೇ ಮಂತ್ರಿ ಸಚಿವರು
ಮುನ್ನದಾವಂಗಾವ ಪರುಠವ
ಭಿನ್ನವಿಲ್ಲದೆ ಪೌರಜನವೆಸೆದಿರ್ದುದಿಭಪುರಿಯ ೧೦

ಅರಸು ಧರ್ಮಜನಾದ ನಮಗಿ
ನ್ನುರವಣಿಪ ಮನ ಬೇಡ ಬೇಡು
ತ್ತರಿಸುವಿಹಪರವೆರಡ ಪಡೆದವು ನಿಖಿಳ ಜಗ ಹೊಗಳೆ
ಪರಿಮಿತದ ಜನ ತಮ್ಮ ಸುಬಲವ
ನಿರದೆ ಮಾಡುವೆನೆಂದು ಮುನಿಜನ
ಧರಣಿಸುರರೊಳಗಾದ ಪುರಜನರೊಲಿದು ಹರಸಿದರು ೧೧

ಬಳಿಕ ಭೀಷ್ಮನ ಬಾಣಶಯನ
ಸ್ಥಳಕೆ ಧರ್ಮಜ ಬಂದು ಧರ್ಮಂ
ಗಳನು ಕೇಳಿದು ರಾಜಧರ್ಮ ಸಮಸ್ತಧರ್ಮವನು
ತಿಳಿದನಗ್ಗದ ದಾನಧರ್ಮಾ
ವಳಿಯನಾತನ ರಾಜ್ಯಪಾಲನ
ನಳ ನಹುಷ ಭರತಾದಿ ಭೂಪರ ಗತಿಗೆ ಗುರುವಾಯ್ತು ೧೨

ಕದನದಲಿ ಕಯ್ಯಾರೆ ದೈತ್ಯರ
ಸದೆದು ಭೂಭಾರವನು ಪರಹ
ಸ್ತದಲಿ ಕಟ್ಟಿಸಿ ಕೊಟ್ಟಭಾಷೆಯನುತ್ತರಾಯೆನಿಸಿ
ನದಿಯ ನಂದನನನು ಪರಾನಂ
ದದಲಿಸೇರಿಸಿ ಪರಮ ಪರಿತೋ
ಷದಲಿ ಪಯಣವ ಮಾಡಿದನು ಮುರವೈರಿ ನಿಜಪುರಿಗೆ ೧೩

ಯಮಸುತನ ತಕ್ಕೈಸಿ ಭೀಮನ
ಮಮತೆಯನು ಭುಲ್ಲೈಸಿ ಪಾರ್ಥನ
ನಮಿತ ಮಕುಟವ ನೆಗಹಿ ಪುಳಕಾಶ್ರುಗಳ ಪೂರದಲಿ
ಯಮಳರನು ಬೋಳೈಸಿ ರಾಯನ
ರಮಣಿಯನು ಸಂತೈಸಿ ವಿದುರ
ಪ್ರಮುಖರನು ಬೀಳ್ಕೊಟ್ಟು ಬಿಜಯಂಗೈದನಸುರಾರಿ ೧೪

ದೇವ ದುಂದುಭಿರವದ ಗಗನದ
ಹೂವಳೆಯ ಪೂರದ ಸಮಸ್ತ ಜ
ನಾವಳಿಯ ಜಯಜೀಯ ನಿರ್ಘೋಷದ ಗಡಾವಣೆಯ
ದೇವಕಿಯ ವಸುದೇವ ರುಕುಮಿಣಿ
ದೇವಿಯಾದಿಯ ಹರುಷದಾವಿ
ರ್ಭಾವ ಮಿಂಗೆ ನಿಜಪುರವ ಹೊಕ್ಕನು ವೀರನಾರಯಣ ೧೫

ಭವದುರಿತಹರವಕಟ ಹರಿನಾ
ಮವನು ನೆನೆವರು ಕಾಲಚಕ್ರದ
ಜವನ ಬೇಗೆಯ ಜುಣುಗಿ ಜಾರುವರಖಿಳ ಮಾನವರು
ಕವಿ ಕುಮಾರವ್ಯಾಸಸೂಕ್ತದ
ಸವಿಯಮೃತವನೊಲಿದೊಲಿದು ಸಂ
ಶ್ರವಣದಲಿ ಕುಡಿಕುಡಿದು ಪದವಿಯ ಪಡೆವುದೀ ಲೋಕ ೧೬

ಶ್ರೀಮದಮರಾಧೀಶ ನುತಗುಣ
ತಾಮರಸಪದ ವಿಪುಳನಿರ್ಮಳ
ನಾಮನನುಪಮ ನಿಖಿಳಯತಿಪತಿದಿವಿಜವಂದಿತನು
ರಾಮನೂರ್ಜಿತನಾಮ ಸಂಧೆಯಾ
ರಾಮನಾಹವಭೀಮ ರಘುಕುಲ
ರಾಮ ಪಾಲಿಸುವೊಲಿದು ಗದುಗಿನ ವೀರನಾರಯಣ ೧೭

ಅರಸ ವೈಶಂಪಾಯನಿಗೆ ನಿಜ
ಕರವ ಮುಗಿದು ಸುವರ್ಣವಸ್ತ್ರಾ
ಭರಣ ಗೋವ್ರಜ ಭೂಮಿ ಕನ್ಯಾದಾನ ಮಣಿಗಣದಿ
ಹಿರಿದು ಪರಿಯಲಿ ಮನದಣಿವವೋ
ಲುರುತರದ ದ್ರವ್ಯಾದಿಗಳ ಭೂ
ಸುರರಿಗಿತ್ತನು ರಾಯ ಜನಮೇಜಯಮಹೀಪಾಲ ೧೮

ಸರ್ಪಯಾಗದೊಳಾದ ಕರ್ಮದ
ದರ್ಪವನು ಕೆಡೆಯೊದೆದು ಬೆಳಗಿದ
ನುಪ್ಪರದ ರವಿತೇಜದಲಿ ಸುರನರರು ಬೆರಗಾಗೆ
ತಪ್ಪದೀ ಭಾರತವ ಕೇಳ್ದಂ
ಗಪ್ಪುದಮರಸ್ತ್ರೀಕದಂಬದೊ
ಳೊಪ್ಪುವಿಂದ್ರನ ಪದವಿಯೆಂದನು ಸೂತ ಕೈಮುಗಿದು ೧೯

ವೇದಪಾರಾಯಣದ ಫಲ ಗಂ
ಗಾದಿ ತೀರ್ಥಸ್ನಾನಫಲ ಕೃ
ಚ್ಛ್ರಾದಿ ತಪಸಿನ ಫಲವು ಜ್ಯೋತಿಷ್ಟೋಮಯಾಗಫಲ
ಮೇದಿನಿಯನೊಲಿದಿತ್ತ ಫಲ ವ
ಸ್ತ್ರಾದಿ ಕನ್ಯಾದಾನಫಲವಹು
ದಾದರಿಸಿ ಭಾರತದೊಳೊಂದಕ್ಷರವ ಕೇಳ್ದರಿಗೆ ೨೦

ಇತಿ ಶ್ರೀಮದಚಿಂತ್ಯ ಮಹಿಮ ಗದುಗು ವೀರನಾರಾಯಣ ಚರಣಾರವಿಂದ ಮಕರಂದ ಮಧುಪಾನ ಪರಿಪುಷ್ಟ ವಚಃಪಟ್ಟದೀ ಸಿಕಾಯ ಶ್ರೀಮತ್ಕುಮಾರವ್ಯಾಸಯೋಗೀಂದ್ರ ವಿರಚಿತಮಪ್ಪ ಕರ್ಣಾಟ ಭಾರತ ಕಥಾಮಂಜರಿಯೊಳ್ ಗದಾಪರ್ವಂ ಸಮಾಪ್ತದುದು.